بيان معاني

# القرآن الكريم

## باللغة الكنادية

محمد حمزة بتور

موسوعة القرآن الكريم
QuranEnc.com

Kn25

# ಪವಿತ್ರ ಕುರ್‌ಆನ್

## ಅರ್ಥಾನುವಾದ - ಕನ್ನಡ ಭಾಷೆಯಲ್ಲಿ

ಮುಹಮ್ಮದ್ ಹಂಝ ಪುತ್ತೂರು

موسوعة القرآن الكريم
QuranEnc.com

ⓗ جمعية خدمة المحتوى الإسلامي باللغات، ١٤٤٦هـ

**جمعية خدمة المحتوى الإسلامي باللغات**

بيان معاني القرآن الكريم - كنادي (مع النص) . / جمعية خدمة

المحتوى الإسلامي باللغات - ط ١.. - الرياض ،١٤٤٦هـ

( ٨١٤ ص ) ؛ .. سم

**رقم الإيداع : ١٤٤٦/١٢٤٧٢**

**ردمك : ٩-٦٥-٨٥١٧-٦٠٣-٩٧٨**

**الطبعة الأولى ١٤٤٦ هـ** ಮೊದಲ ಮೊದಲ ಆವೃತ್ತಿ 1446 ಹಿ.

**للتحقق من التحديثات** ನವೀಕರಣಗಳಿಗಾಗಿ ಪರಿಶೀಲಿಸಿ

2024-03-17 (V1.0.3)

للتواصل: info@quranenc.com

**نحو توفير تفاسير وتراجم موثوقة لمعاني القرآن بلغات العالم**

جمعية الربوة

المحتوى الإسلامي

# مقدمة

القرآن الكريم هو كلام الله رب العالمين وخالقهم، أنزله على خاتم الأنبياء والمرسلين محمد ﷺ ليبين للبشرية الغاية من خلقهم، ولهدايتهم إلى ما فيه سعادتهم في الدنيا والآخرة، وتخليصهم من الشقاء الأبدي بعد الموت، وهو آخر الكتب الإلهية نزولاً، مصدقا لها، وناسخا لشرائعها.

والقرآن الكريم آية ومعجزة أبدية، وهو دليل على نبوة رسول الله محمد ﷺ، تحدى الله الإنس والجن على أن يأتوا بمثله بل ولو بسورة منه، فعجزوا عن ذلك.

لم تصل إليه يد التحريف والتبديل منذ نزوله قبل أكثر من ١٤٠٠ سنة، وسيبقى محفوظاً باللغة العربية التي نزل بها، حيث تكفل الله سبحانه وتعالى بحفظه الى آخر الزمان.

والقرآن الكريم هو المصدر الرئيس للإسلام، والدستور الذي ينظم حياة البشر ويحكمها في كل زمان ومكان، يدعو إلى عبادة الإله الخالق وحده، ويبين ما يحتاجه الإنسان لمعرفة ربه ودينه، وبداية خلق الكون، وأطوار خلق الإنسان، ويخبر عن غيوب ماضية ومستقبلة، وعن قصص أنبياء سابقين عليهم السلام، وكيف نصرهم الله وأهلك أعداءهم، وفيه أصول العبادات والمعاملات والدعوة إلى الأخلاق المحمودة، والتحذير من الأخلاق المذمومة، والمصير في الآخرة؛ إما الجنة دار المؤمنين وإما النار دار الظالمين والكافرين.

ولأهمية هذا الكتاب العظيم الذي أنزله الله باللغة العربية، وأمر بإبلاغه للبشرية؛ يطيب لنا -أيها القارئ الكريم- أن نقدم لك ترجمة لمعانيه بلغتك، تسهيلاً لفهمه وتحقيقاً لتبليغه، وقد بذل فريق العمل جهده في فهم معانيه وترجمتها، مع العلم اليقيني أنه مهما بلغت دقة الترجمة فستظل قاصرة عن أداء المعاني العظيمة التي يدل عليها نص القرآن الكريم المعجز الذي يفوق أي عمل بشري، ومن أراد أن يقف على مزيد من الحقائق التي جاء بها القرآن الكريم؛ فنوصيه بتعلم اللغة العربية التي نزل بها.

وسلام على المرسلين، والحمد لله رب العالمين.

موسوعة القرآن الكريم

يمكنك الإطلاع على معاني القرآن الكريم بلغتك من خلال مسح الرمز المرئي (QR Code) بكاميرا الهاتف

•يسعدنا أن نستقبل مقترحاتكم وملاحظاتكم لتطوير الترجمة من خلال نافذة الملاحظات الموجودة أمام كل آية في موقع موسوعة القرآن الكريم

**(www.quranenc.com)**

وعند الرغبة في التواصل معنا يمكن مراسلتنا عبر البريد الإلكتروني:

**info@quranenc.com**

# ಪರಿಚಯ

ಪವಿತ್ರ ಕುರ್‌ಆನ್ ಸರ್ವಲೋಕಗಳ ಸೃಷ್ಟಿಕರ್ತನಾದ ಅಲ್ಲಾಹನ ವಚನಗಳು. ಅವನು ಅದನ್ನು ಅಂತಿಮ ಪ್ರವಾದಿ ಮುಹಮ್ಮದ್(ಸ) ರಿಗೆ ಅವತೀರ್ಣಗೊಳಿಸಿದನು. ಮಾನವರಿಗೆ ಅವರನ್ನು ಸೃಷ್ಟಿಸಿದ ಪರಮೋಚ್ಛ ಉದ್ದೇಶವನ್ನು ತಿಳಿಸಲು, ಇಹಲೋಕ ಮತ್ತು ಪರಲೋಕದಲ್ಲಿ ಅವರಿಗೆ ನೀಡಲಾಗುವ ಸೌಭಾಗ್ಯಗಳ ಕಡೆಗೆ ಅವರಿಗೆ ಮಾರ್ಗದರ್ಶನ ನೀಡಲು ಮತ್ತು ಮರಣಾನಂತರದ ಶಾಶ್ವತ ದೌರ್ಭಾಗ್ಯದಿಂದ ಅವರನ್ನು ರಕ್ಷಿಸಲು ಪವಿತ್ರ ಕುರ್‌ಆನ್ ಅನ್ನು ಅವತೀರ್ಣಗೊಳಿಸಲಾಗಿದೆ. ಇದು ಕಟ್ಟಕಡೆಯದಾಗಿ ಅವತೀರ್ಣವಾದ ದೈವಿಕ ಗ್ರಂಥವಾಗಿದ್ದು ಇದಕ್ಕಿಂತ ಮುಂಚೆ ಅವತೀರ್ಣವಾದ ದೈವಿಕ ಗ್ರಂಥಗಳನ್ನು ಇದು ದೃಢೀಕರಿಸುತ್ತದೆ ಮತ್ತು ಅವುಗಳಲ್ಲಿರುವ ನಿಯಮಗಳನ್ನು ರದ್ದುಗೊಳಿಸುತ್ತದೆ.

ಪವಿತ್ರ ಕುರ್‌ಆನ್ ಶಾಶ್ವತವಾಗಿ ನೆಲೆನಿಲ್ಲುವ ಪವಾಡವಾಗಿದ್ದು, ಮುಹಮ್ಮದ್(ಸ) ರವರು ಪ್ರವಾದಿಯೆನ್ನುವುದಕ್ಕೆ ಇದು ಪುರಾವೆಯಾಗಿದೆ. ಪವಿತ್ರ ಕುರ್‌ಆನ್ನಂತಿರುವ ಒಂದು ಗ್ರಂಥವನ್ನು ರಚಿಸಿ ತರಲು, ಕನಿಷ್ಠಪಕ್ಷ ಅದರ ಅಧ್ಯಾಯದಂತಿರುವ ಒಂದು ಅಧ್ಯಾಯವನ್ನು ರಚಿಸಿ ತರಲು ಅಲ್ಲಾಹು ಮನುಷ್ಯರಿಗೆ ಮತ್ತು ಜಿನ್ನ್ (ಅಗೋಚರ ಜೀವಿಗಳು) ಗಳಿಗೆ ಸವಾಲು ಹಾಕಿದ್ದಾನೆ. ಆದರೆ ಇಂದಿನ ತನಕ ಅವರಲ್ಲಿ ಯಾರೂ ಈ ಸವಾಲನ್ನು ಸ್ವೀಕರಿಸುವಲ್ಲಿ ಯಶಸ್ವಿಯಾಗಿಲ್ಲ.

ಪವಿತ್ರ ಕುರ್‌ಆನ್ ಅವತೀರ್ಣವಾಗಿ 1400 ವರ್ಷಗಳು ಕಳೆದಿದ್ದರೂ ಅದರಲ್ಲಿ ಒಂದೇ ಒಂದು ತಿದ್ದುಪಡಿ ಮಾಡಲು ಯಾರಿಗೂ ಸಾಧ್ಯವಾಗಿಲ್ಲ. ಅದು ಅವತೀರ್ಣವಾದ ಮೂಲ ಅರಬ್ಬಿ ಭಾಷೆಯಲ್ಲೇ ಅದು ಶಾಶ್ವತವಾಗಿ ಉಳಿಯಲಿದೆ. ಅಂತ್ಯದಿನದ ತನಕ ಅದನ್ನು ಸಂರಕ್ಷಿಸುವ ಹೊಣೆಯನ್ನು ಸ್ವತಃ ಸರ್ವಶಕ್ತನಾದ ಅಲ್ಲಾಹನೇ ವಹಿಸಿಕೊಂಡಿದ್ದಾನೆ.

ಪವಿತ್ರ ಕುರ್‌ಆನ್ ಇಸ್ಲಾಂ ಧರ್ಮದ ಮೂಲಭೂತ ಆಧಾರವಾಗಿದೆ. ಅದು ಎಲ್ಲಾ ಕಾಲಗಳಲ್ಲೂ, ಸ್ಥಳಗಳಲ್ಲೂ ಮಾನವ ಜೀವನವನ್ನು ವ್ಯವಸ್ಥಿತಗೊಳಿಸುವ ಮತ್ತು ಶಾಸಿಸುವ ಸಂವಿಧಾನವಾಗಿದೆ. ಅದು ಏಕೈಕ ಸೃಷ್ಟಿಕರ್ತನ ಆರಾಧನೆಯ ಕಡೆಗೆ ಆಮಂತ್ರಿಸುತ್ತದೆ. ಮನುಷ್ಯನನ್ನು ಸೃಷ್ಟಿಸಿದ ದೇವನ ಬಗ್ಗೆ, ಅವನ ಧರ್ಮದ ಬಗ್ಗೆ, ಪ್ರಪಂಚದ ಆರಂಭದ ಬಗ್ಗೆ, ಮನುಷ್ಯ ಸೃಷ್ಟಿಯ ವಿವಿಧ ಘಟ್ಟಗಳ ಬಗ್ಗೆ ತಿಳಿಸುತ್ತದೆ. ಈಗಾಗಲೇ ಸಂಭವಿಸಿದ ಮತ್ತು ಭವಿಷ್ಯದಲ್ಲಿ ಸಂಭವಿಸಲಿರುವ ಘಟನೆಗಳ ಬಗ್ಗೆ ತಿಳಿಸುತ್ತದೆ. ಪೂರ್ವ ಪ್ರವಾದಿಗಳ ಬಗ್ಗೆ, ಅವರಿಗೆ ಅಲ್ಲಾಹು ನೀಡಿದ ಸಹಾಯದ ಬಗ್ಗೆ ಮತ್ತು ಅವರ ವಿರೋಧಿಗಳನ್ನು ನಾಶ ಮಾಡಿದ ಬಗ್ಗೆ ತಿಳಿಸುತ್ತದೆ. ಅದರಲ್ಲಿ ಮೂಲ ಆರಾಧನೆಗಳ ಬಗ್ಗೆ, ವ್ಯವಹಾರಗಳ ಬಗ್ಗೆ ವಿವರಣೆಗಳಿವೆ. ಅದು ಅತ್ಯುತ್ತಮ ಗುಣಸ್ವಭಾವದ ಕಡೆಗೆ ಆಮಂತ್ರಿಸುತ್ತದೆ ಮತ್ತು ಕೆಟ್ಟ ಗುಣಸ್ವಭಾವಗಳ ಬಗ್ಗೆ ಎಚ್ಚರಿಕೆ ನೀಡುತ್ತದೆ. ಪರಲೋಕದ ಅಂತಿಮ ನೆಲೆಯ ಬಗ್ಗೆ - ಅಂದರೆ ಸತ್ಯವಿಶ್ವಾಸಿಗಳ ನೆಲೆಯಾದ ಸ್ವರ್ಗ ಮತ್ತು ಅತಿರೇಕಿಗಳ ಹಾಗೂ ಸತ್ಯನಿಷೇಧಿಗಳ ನೆಲೆಯಾದ ನರಕಾಗ್ನಿಯ ಬಗ್ಗೆ ವಿವರಿಸುತ್ತದೆ.

ಪ್ರಿಯ ಓದುಗರೇ, ಅತ್ಯಧಿಕ ಪ್ರಾಮುಖ್ಯತೆಯಿರುವ ಈ ಗ್ರಂಥವನ್ನು ಸರ್ವಶಕ್ತನಾದ ಅಲ್ಲಾಹು ಅರಬ್ಬಿ ಭಾಷೆಯಲ್ಲಿ ಅವತೀರ್ಣಗೊಳಿಸಿ, ಸಂಪೂರ್ಣ ಮಾನವಕುಲಕ್ಕೆ ಅದನ್ನು ತಲುಪಿಸಬೇಕೆಂದು ಆಜ್ಞಾಪಿಸಿರುವುದರಿಂದ, ಇದನ್ನು ಸುಲಭವಾಗಿ ಅರ್ಥಮಾಡಿಕೊಳ್ಳಲು ಮತ್ತು ಇದನ್ನು ಎಲ್ಲಾ ಮನುಷ್ಯರಿಗೂ ತಲುಪಿಸಬೇಕೆಂಬ ಆಜ್ಞೆಯನ್ನು ಪಾಲಿಸಲು, ಇದರ ಅರ್ಥ ಅನುವಾದವನ್ನು ನಿಮ್ಮದೇ ಭಾಷೆಯಲ್ಲಿ ನಿಮಗೆ ಅರ್ಪಿಸಲು ನಮಗೆ ಸಂತೋಷವಾಗುತ್ತದೆ. ಇದನ್ನು ಅತ್ಯುತ್ತಮವಾಗಿ ಅನುವಾದಗೊಳಿಸಲು ನಮ್ಮ ಅನುವಾದಕರು ಗರಿಷ್ಠ ಪರಿಶ್ರಮಿಸಿದ್ದಾರೆ. ಆದರೆ ಅನುವಾದವು ಎಷ್ಟೇ ಕರಾರುವಾಕ್ಕಾಗಿದ್ದರೂ ಪವಿತ್ರ ಕುರ್‌ಆನ್ ಎಂಬ ಈ ಪವಾಡ ಗ್ರಂಥದ ಸಂಪೂರ್ಣ ಸಾರವನ್ನು ಮನುಷ್ಯ ಪ್ರಯತ್ನದ ಮೂಲಕ ಯಾವುದೇ ಭಾಷೆಯಲ್ಲೂ ಪ್ರತಿಬಿಂಬಿಸಲು ಖಂಡಿತ ಸಾಧ್ಯವಿಲ್ಲ. ಪವಿತ್ರ ಕುರ್‌ಆನಿನ ಸಂಪೂರ್ಣ ಸಾರವನ್ನು ಹೀರಲು ಬಯಸುವವರಿಗೆ ನಾವು ಪವಿತ್ರ ಕುರ್‌ಆನ್ ಅವತೀರ್ಣವಾದ ಅರಬ್ಬಿ ಭಾಷೆಯನ್ನು ಕಲಿಯಲು ಸಲಹೆ ನೀಡುತ್ತೇವೆ.

ಸಂದೇಶವಾಹಕರ ಮೇಲೆ ಶಾಂತಿಯಿರಲಿ. ಸರ್ವಸ್ತುತಿಗಳು ಸರ್ವಲೋಕಗಳ ಒಡೆಯನಾದ ಅಲ್ಲಾಹನಿಗೆ ಮೀಸಲು.

ಪವಿತ್ರ ಕುರ್‌ಆನ್ ವಿಶ್ವಕೋಶ

*ಅನುವಾದವನ್ನು ಉತ್ತಮಗೊಳಿಸಲು ನಿಮ್ಮ ಸಲಹೆ-ಸೂಚನೆಗಳನ್ನು ನಾವು ಸ್ವಾಗತಿಸುತ್ತೇವೆ. ಸಲಹೆ-ಸೂಚನೆ ನೀಡಲು ಬಯಸುವವರು ಪವಿತ್ರ ಕುರ್‌ಆನ್ ವಿಶ್ವಕೋಶ ಜಾಲತಾಣದಲ್ಲಿ

**(www.quranenc.com)**

ಪ್ರತಿಯೊಂದು ಕುರ್‌ಆನ್ ಶ್ಲೋಕದ ಮುಂಭಾಗದಲ್ಲಿರುವ ಸೂಚನೆ ಪಟ್ಟಿಗೆಯ ಮೂಲಕ ನೀಡಬಹುದು. ನಮ್ಮನ್ನು ಸಂಪರ್ಕಿಸಲು ಬಯಸುವವರು ಇಮೇಲ್ ಮೂಲಕ ಸಂಪರ್ಕಿಸಬಹುದು:

**info@quranenc.com**

# 1. ಅಲ್- ಫಾತಿಹ

| | | |
|---|---|---|
| 1. | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ.[1] | بِسۡمِ ٱللَّهِ ٱلرَّحۡمَٰنِ ٱلرَّحِيمِ ١ |
| 2. | ಸರ್ವಲೋಕಗಳ ಪರಿಪಾಲಕನಾದ[2] ಅಲ್ಲಾಹನಿಗೆ ಸರ್ವಸ್ತುತಿ.[3] | ٱلۡحَمۡدُ لِلَّهِ رَبِّ ٱلۡعَٰلَمِينَ ٢ |
| 3. | ಪರಮ ದಯಾಮಯ, ಕರುಣಾನಿಧಿ,[4] | ٱلرَّحۡمَٰنِ ٱلرَّحِيمِ ٣ |
| 4. | ಪ್ರತಿಫಲದ ದಿನದ ಒಡೆಯ.[5] | مَٰلِكِ يَوۡمِ ٱلدِّينِ ٤ |
| 5. | ನಾವು ನಿನ್ನನ್ನು ಮಾತ್ರ ಆರಾಧಿಸುತ್ತೇವೆ;[6] ಮತ್ತು ನಿನ್ನಿಂದ ಮಾತ್ರ ಸಹಾಯ ಬೇಡುತ್ತೇವೆ.[7] | إِيَّاكَ نَعۡبُدُ وَإِيَّاكَ نَسۡتَعِينُ ٥ |
| 6. | ನಮಗೆ ನೇರ ಮಾರ್ಗವನ್ನು ತೋರಿಸು. | ٱهۡدِنَا ٱلصِّرَٰطَ ٱلۡمُسۡتَقِيمَ ٦ |
| 7. | ನೀನು ಅನುಗ್ರಹಿಸಿದವರ ಮಾರ್ಗವನ್ನು. (ನಿನ್ನ) ಕೋಪಕ್ಕೆ ಪಾತ್ರರಾದವರ ಮಾರ್ಗವನ್ನಲ್ಲ; ದಾರಿತಪ್ಪಿದವರ ಮಾರ್ಗವನ್ನೂ ಅಲ್ಲ.[8] | صِرَٰطَ ٱلَّذِينَ أَنۡعَمۡتَ عَلَيۡهِمۡ غَيۡرِ ٱلۡمَغۡضُوبِ عَلَيۡهِمۡ وَلَا ٱلضَّآلِّينَ ٧ |

[1] ಅಲ್ಲಾಹನ ಹೆಸರಿನ ಮೂಲಕ ಸಹಾಯವನ್ನು ಬೇಡುತ್ತಾ ನಾನು ಪವಿತ್ರ ಕುರ್‌ಆನ್ ಪಠಣವನ್ನು ಆರಂಭಿಸುತ್ತೇನೆ. 'ಅಲ್ಲಾಹು' ಎಂಬುದು ಅಲ್ಲಾಹನ ವಿಶೇಷ ಹೆಸರು. ಈ ಹೆಸರು ಅಲ್ಲಾಹನಿಗೆ ಮಾತ್ರ ಸೀಮಿತವಾಗಿದ್ದು, ಇತರ ಯಾರನ್ನೂ ಈ ಹೆಸರಿನಿಂದ ಕರೆಯುವ ಹಾಗಿಲ್ಲ. ಅಲ್ಲಾಹು ಎಂದರೆ ಏಕೈಕ ಸತ್ಯದೇವ ಅಥವಾ ಏಕೈಕ ಪರಮೋಚ್ಛ ದೇವ.

[2] ಇಲ್ಲಿ 'ರಬ್ಬ್' ಅನ್ನು ಪರಿಪಾಲಕ ಎಂದು ಅನುವಾದ ಮಾಡಲಾಗಿದೆ. ರಬ್ಬ್ ಎಂದರೆ ಎಲ್ಲಾ ಸೃಷ್ಟಿಗಳನ್ನು ಸೃಷ್ಟಿಸಿ, ಅವುಗಳ ಎಲ್ಲಾ ಅಗತ್ಯಗಳನ್ನು ಪೂರೈಸಿ, ಅವುಗಳನ್ನು ಹಂತ ಹಂತವಾಗಿ ಬೆಳೆಸುತ್ತಾ ನಿಯಂತ್ರಿಸುತ್ತಾ ಪರಿಪೂರ್ಣತೆಗೆ ತಲುಪಿಸುವವನು. 'ಆಲಮೀನ್' ಎಂದರೆ ಲೋಕಗಳು ಅಥವಾ ಪ್ರಪಂಚಗಳು. ಇಲ್ಲಿ ಲೋಕಗಳು ಎಂದರೆ, ಮನುಷ್ಯರ ಲೋಕ, ದೇವದೂತರ ಲೋಕ, ಯಕ್ಷಗಳ ಲೋಕ, ಪ್ರಾಣಿಗಳ ಲೋಕ, ಪಕ್ಷಿಗಳ ಲೋಕ ಇತ್ಯಾದಿ. ಅಲ್ಲಾಹನ ಹೊರತಾದುದೆಲ್ಲವೂ ಲೋಕಗಳಾಗಿದ್ದು ಅವನು ಈ ಎಲ್ಲಾ ಲೋಕಗಳ ಪಾಲನೆ-ಪೋಷಣೆ ಮಾಡುವವನಾಗಿದ್ದಾನೆ.

[3] 'ಅಲ್-ಹಮ್ದ್' (ಸರ್ವಸ್ತುತಿ) ಎಂಬ ಪದದಲ್ಲಿ ಸ್ತುತಿ, ಪ್ರಶಂಸೆ, ಹೊಗಳಿಕೆಗಳೆಲ್ಲವೂ ಒಳಗೊಳ್ಳುತ್ತದೆ. ಅವೆಲ್ಲಕ್ಕೂ ಅಲ್ಲಾಹನೇ ನೈಜ ಹಕ್ಕುದಾರ. ಅವನು ಎಲ್ಲಾ ವಸ್ತುಗಳ ಸೃಷ್ಟಿಕರ್ತ, ಪರಿಪಾಲಕ, ನಿಯಂತ್ರಕ ಮತ್ತು ಅನುಗ್ರಹದಾತ. ಆದ್ದರಿಂದ ಅವನು ಪ್ರಶಂಸೆಗೆ ಅರ್ಹನಾಗಿದ್ದಾನೆ. ಅವನು ತನ್ನ ಸಾರದಲ್ಲೂ, ತನ್ನ ಹೆಸರು ಮತ್ತು ಗುಣಲಕ್ಷಣಗಳಲ್ಲೂ ಮತ್ತು ತನ್ನ ಕೆಲಸ-ಕಾರ್ಯಗಳಲ್ಲೂ ಪರಿಪೂರ್ಣನಾಗಿರುವುದರಿಂದಲೂ ಅವನು ಪ್ರಶಂಸೆಗೆ ಅರ್ಹನಾಗಿದ್ದಾನೆ.

[4] ರಹ್ಮಾನ್ (ಪರಮ ದಯಾಮಯ) ಎಂದರೆ ವಿಶಾಲವಾದ ಕರುಣೆಯನ್ನು ಹೊಂದಿರುವವನು. ಎಲ್ಲರಿಗೂ ಕರುಣೆ ತೋರುವವನು. ರಹೀಮ್ (ಕರುಣಾನಿಧಿ) ಎಂದರೆ ಸತ್ಯವಿಶ್ವಾಸಿಗಳಿಗೆ ಮಾತ್ರ ವಿಶೇಷವಾಗಿ ಕರುಣೆ ತೋರುವವನು.

[5] ಯೌಮುದ್ದೀನ್ (ಪ್ರತಿಫಲದ ದಿನ) ಎಂದರೆ ಪುನರುತ್ಥಾನ ದಿನ. ಕರ್ಮಗಳ ವಿಚಾರಣೆ ನಡೆಸಿ ಅವುಗಳಿಗೆ ಪ್ರತಿಫಲ ನೀಡುವ ದಿನ. ಅಂದು ಎಲ್ಲಾ ವಸ್ತುಗಳ ನಿರುಪಾಧಿಕ ಒಡೆತನವು ಅಲ್ಲಾಹನ ಕೈಯಲ್ಲಿರುತ್ತದೆ.

[6] ಆರಾಧಿಸುವುದು ಎಂದರೆ ಒಬ್ಬರ ಸಂಪ್ರೀತಿಯನ್ನು ಪಡೆಯುವುದಕ್ಕಾಗಿ ಅವರ ಮುಂದೆ ಪರಮೋಚ್ಛ ವಿನಯವನ್ನು ಮತ್ತು ಸಂಪೂರ್ಣ ಶರಣಾಗತಿಯನ್ನು ವ್ಯಕ್ತಪಡಿಸುವುದು. ಅವರಿಗೆ ಸಂಪೂರ್ಣವಾಗಿ ಸಮರ್ಪಿಸಿಕೊಳ್ಳುವುದು. ಇದು ಅಲ್ಲಾಹನಿಗೆ ಮಾತ್ರ ಅರ್ಹವಾಗಿದ್ದು ಅವನನ್ನು ಮಾತ್ರ ಆರಾಧಿಸಬೇಕಾಗಿದೆ. ಅಲ್ಲಾಹು ಪ್ರೀತಿಸುವ ಮತ್ತು ಅವನ ಸಂಪ್ರೀತಿಗೆ ಕಾರಣವಾಗುವ ಎಲ್ಲಾ ಮಾತುಗಳು ಮತ್ತು ಬಾಹ್ಯ ಹಾಗೂ ಆಂತರಿಕ ಕ್ರಿಯೆಗಳು ಆರಾಧನೆಗಳಾಗಿವೆ.

[7] ಅಲ್ಲಾಹು ಅಲ್ಲದವರಿಗೆ ಆರಾಧನೆ ಮಾಡುವುದನ್ನು ನಿಷೇಧಿಸಲಾಗಿರುವಂತೆ ಅಲ್ಲಾಹು ಅಲ್ಲದವರಲ್ಲಿ ಅಭೌತಿಕ ಸಹಾಯ ಬೇಡುವುದನ್ನು ಕೂಡ ನಿಷೇಧಿಸಲಾಗಿದೆ.

[8] ಪ್ರವಾದಿಗಳು, ಸತ್ಯವಂತರು, ಹುತಾತ್ಮರು, ಮಹಾಪುರುಷರು ಮುಂತಾದ ನೀನು ಅನುಗ್ರಹಿಸಿದವರ ಮಾರ್ಗವನ್ನು ತೋರಿಸು. ನಿನ್ನ ಕೋಪಕ್ಕೆ

# 2. ಅಲ್-ಬಕರ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಅಲಿಫ್-ಲಾಮ್-ಮೀಮ್.[1]

الٓمٓ ١

2. ಈ ಗ್ರಂಥದಲ್ಲಿ ಯಾವುದೇ ಸಂದೇಹವಿಲ್ಲ; ಇದು ದೇವಭಯವು-
ಳ್ಳವರಿಗೆ ಸನ್ಮಾರ್ಗವನ್ನು ತೋರಿಸುತ್ತದೆ.

ذَٰلِكَ ٱلۡكِتَٰبُ لَا رَيۡبَۛ فِيهِۛ هُدٗى
لِّلۡمُتَّقِينَ ٢

3. ಅವರು (ದೇವಭಯವುಳ್ಳವರು) ಯಾರೆಂದರೆ, ಅದೃಶ್ಯ
ವಿಷಯಗಳಲ್ಲಿ[2] ವಿಶ್ವಾಸವಿಡುವವರು, ನಮಾಝ್
ಸಂಸ್ಥಾಪಿಸುವವರು ಮತ್ತು ನಾವು ಅವರಿಗೆ ಒದಗಿಸಿದ
(ಧನದಿಂದ) ಖರ್ಚು ಮಾಡುವವರು.

ٱلَّذِينَ يُؤۡمِنُونَ بِٱلۡغَيۡبِ وَيُقِيمُونَ ٱلصَّلَوٰةَ
وَمِمَّا رَزَقۡنَٰهُمۡ يُنفِقُونَ ٣

4. ನಿಮಗೆ ಅವತೀರ್ಣವಾದ ಗ್ರಂಥದಲ್ಲಿ ಮತ್ತು ನಿಮಗಿಂತ ಮೊದಲು
ಅವತೀರ್ಣವಾದ ಗ್ರಂಥಗಳಲ್ಲಿ ಅವರು ವಿಶ್ವಾಸವಿಡುತ್ತಾರೆ.
ಪರಲೋಕದಲ್ಲಿ ಅವರು ದೃಢವಾಗಿ ವಿಶ್ವಾಸವಿಡುತ್ತಾರೆ.

وَٱلَّذِينَ يُؤۡمِنُونَ بِمَآ أُنزِلَ إِلَيۡكَ وَمَآ أُنزِلَ مِن
قَبۡلِكَ وَبِٱلۡأٓخِرَةِ هُمۡ يُوقِنُونَ ٤

5. ಅವರು ಅವರ ಪರಿಪಾಲಕನ (ಅಲ್ಲಾಹನ) ಕಡೆಯ ಸನ್ಮಾರ್ಗದ-
ಲ್ಲಿದ್ದಾರೆ. ಅವರೇ ಯಶಸ್ವಿಯಾದವರು.

أُوْلَٰٓئِكَ عَلَىٰ هُدٗى مِّن رَّبِّهِمۡۖ وَأُوْلَٰٓئِكَ هُمُ
ٱلۡمُفۡلِحُونَ ٥

6. ನಿಶ್ಚಯವಾಗಿಯೂ ಸತ್ಯನಿಷೇಧಿಗಳು ಯಾರೋ—ಅವರಿಗೆ
ನೀವು ಎಚ್ಚರಿಕೆ ನೀಡಿದರೂ, ನೀಡದಿದ್ದರೂ ಅವರಿಗೆ ಅದು
ಸಮಾನವಾಗಿದೆ; ಅವರು ವಿಶ್ವಾಸವಿಡುವುದಿಲ್ಲ.

إِنَّ ٱلَّذِينَ كَفَرُواْ سَوَآءٌ عَلَيۡهِمۡ ءَأَنذَرۡتَهُمۡ أَمۡ
لَمۡ تُنذِرۡهُمۡ لَا يُؤۡمِنُونَ ٦

7. ಅಲ್ಲಾಹು ಅವರ ಹೃದಯಗಳಿಗೆ ಮತ್ತು ಅವರ ಶ್ರವಣಗಳಿಗೆ
ಮೊಹರು ಹಾಕಿದ್ದಾನೆ. ಅವರ ದೃಷ್ಟಿಗಳ ಮೇಲೆ ಪರದೆಯಿದೆ.[3]
ಅವರಿಗೆ ಘೋರ ಶಿಕ್ಷೆಯಿದೆ.

خَتَمَ ٱللَّهُ عَلَىٰ قُلُوبِهِمۡ وَعَلَىٰ سَمۡعِهِمۡۖ وَعَلَىٰٓ
أَبۡصَٰرِهِمۡ غِشَٰوَةٞۖ وَلَهُمۡ عَذَابٌ عَظِيمٞ ٧

8. “ನಾವು ಅಲ್ಲಾಹನಲ್ಲಿ ಮತ್ತು ಅಂತ್ಯದಿನದಲ್ಲಿ ವಿಶ್ವಾಸವಿಟ್ಟಿದ್ದೇವೆ”

وَمِنَ ٱلنَّاسِ مَن يَقُولُ ءَامَنَّا بِٱللَّهِ وَبِٱلۡيَوۡمِ

---

ಪಾತ್ರರಾದವರ ಮಾರ್ಗವನ್ನು ತೋರಿಸಬೇಡ. ಅಲ್ಲಾಹನ ಕೋಪಕ್ಕೆ ಪಾತ್ರರಾದವರು ಎಂದರೆ ಯಹೂದಿಗಳಂತೆ ಸತ್ಯವನ್ನು ತಿಳಿದೂ ಸಹ ಅದನ್ನು ಅಂಗೀಕರಿಸದವರು. ಅದೇ ರೀತಿ, ದಾರಿ ತಪ್ಪಿದವರ ಮಾರ್ಗವನ್ನು ಕೂಡ ತೋರಿಸಬೇಡ. ದಾರಿ ತಪ್ಪಿದವರು ಎಂದರೆ ಕ್ರೈಸ್ತರಂತೆ ಸತ್ಯವನ್ನು ತಿಳಿಯುವ ಗೋಜಿಗೆ ಹೋಗದೆ ದಾರಿ ತಪ್ಪಿ ನಡೆದವರು.

[1] ಇವುಗಳನ್ನು ‘ಹುರೂಫ್ ಮುಕತ್ತಆತ್’ (ಬಿಡಿ ಅಕ್ಷರಗಳು) ಎಂದು ಕರೆಯಲಾಗುತ್ತದೆ. ಇವುಗಳಿಗೆ ವಿಶೇಷವಾದ ಅರ್ಥವಿದೆಯೆಂದು ಹೇಳುವ ಯಾವುದೇ ವರದಿಗಳಿಲ್ಲ. ಇವುಗಳ ಉದ್ದೇಶವೇನೆಂದು ಸರ್ವಶಕ್ತನಾದ ಅಲ್ಲಾಹು ಮಾತ್ರ ಬಲ್ಲ.

[2] ಅದೃಶ್ಯ ವಿಷಯಗಳು ಎಂದರೆ ಇಂದ್ರಿಯಗಳಿಗೆ ಗ್ರಹಿಸಲಾಗದ, ನಮ್ಮಿಂದ ಸಂಪೂರ್ಣ ಮರೆಯಾಗಿರುವ ಸಂಗತಿಗಳು. ಉದಾಹರಣೆಗೆ, ಪರಲೋಕ, ಸಮಾಧಿಯ ಶಿಕ್ಷೆ, ಸ್ವರ್ಗ, ನರಕ ಇತ್ಯಾದಿ.

[3] ಅವರು ನಿರಂತರ ಸತ್ಯನಿಷೇಧ ಮತ್ತು ದುಷ್ಕರ್ಮಗಳಲ್ಲಿ ಮಗ್ನರಾಗುತ್ತಿದ್ದುದರಿಂದ ಅವರ ಹೃದಯಗಳು ಕಠೋರವಾದವು ಮತ್ತು ಸತ್ಯವನ್ನು ಸ್ವೀಕರಿಸುವ ಮನಸ್ಥಿತಿಯೇ ಅವರಿಗೆ ಇಲ್ಲವಾಯಿತು.

ٱلۡأٓخِرِ وَمَا هُم بِمُؤۡمِنِينَ ۝٨

ಎಂದು ಹೇಳುವ ಕೆಲವು ಜನರಿದ್ದಾರೆ. ಆದರೆ ವಾಸ್ತವವಾಗಿ ಅವರು ಸತ್ಯವಿಶ್ವಾಸಿಗಳಲ್ಲ.

يُخَٰدِعُونَ ٱللَّهَ وَٱلَّذِينَ ءَامَنُواْ وَمَا يَخۡدَعُونَ إِلَّآ أَنفُسَهُمۡ وَمَا يَشۡعُرُونَ ۝٩

9. ಅವರು (ತಮ್ಮ ಡಾಂಭಿಕತೆಯ ಮೂಲಕ) ಅಲ್ಲಾಹನನ್ನು ಮತ್ತು ಸತ್ಯವಿಶ್ವಾಸಿಗಳನ್ನು ಮೋಸಗೊಳಿಸಬಹುದೆಂದು (ಭಾವಿಸುತ್ತಾರೆ). ಆದರೆ, ವಾಸ್ತವವಾಗಿ ಅವರು ಅವರನ್ನೇ ಮೋಸಗೊಳಿಸುತ್ತಿದ್ದಾರೆ. ಆದರೆ, ಅವರು ಅದನ್ನು ಅರ್ಥಮಾಡಿಕೊಳ್ಳುವುದಿಲ್ಲ.

فِي قُلُوبِهِم مَّرَضٞ فَزَادَهُمُ ٱللَّهُ مَرَضٗاۖ وَلَهُمۡ عَذَابٌ أَلِيمُۢ بِمَا كَانُواْ يَكۡذِبُونَ ۝١٠

10. ಅವರ ಹೃದಯಗಳಲ್ಲಿ ರೋಗವಿದೆ. ಅಲ್ಲಾಹು ಅವರಿಗೆ ಆ ರೋಗವನ್ನು ಇನ್ನಷ್ಟು ಉಲ್ಬಣಗೊಳಿಸಿದ್ದಾನೆ.[1] ಅವರು (ನಿರಂತರ) ಸುಳ್ಳು ಹೇಳುವ ಕಾರಣ ಅವರಿಗೆ ಯಾತನಾಮಯ ಶಿಕ್ಷೆಯೂ ಇದೆ.

وَإِذَا قِيلَ لَهُمۡ لَا تُفۡسِدُواْ فِي ٱلۡأَرۡضِ قَالُوٓاْ إِنَّمَا نَحۡنُ مُصۡلِحُونَ ۝١١

11. ನೀವು ಭೂಮಿಯಲ್ಲಿ ಕಿಡಿಗೇಡಿತನ ಮಾಡಬೇಡಿ ಎಂದು ಅವರೊಡನೆ ಹೇಳಲಾದರೆ, ಅವರು ಹೇಳುತ್ತಾರೆ: “ನಾವು ಕೇವಲ ಸುಧಾರಣೆ ಮಾಡುವವರು.”

أَلَآ إِنَّهُمۡ هُمُ ٱلۡمُفۡسِدُونَ وَلَٰكِن لَّا يَشۡعُرُونَ ۝١٢

12. ತಿಳಿಯಿರಿ! ಸತ್ಯವಾಗಿಯೂ ಅವರೇ ಕಿಡಿಗೇಡಿತನ ಮಾಡುವವರು. ಆದರೆ ಅವರು ಅರ್ಥಮಾಡಿಕೊಳ್ಳುವುದಿಲ್ಲ.

وَإِذَا قِيلَ لَهُمۡ ءَامِنُواْ كَمَآ ءَامَنَ ٱلنَّاسُ قَالُوٓاْ أَنُؤۡمِنُ كَمَآ ءَامَنَ ٱلسُّفَهَآءُۗ أَلَآ إِنَّهُمۡ هُمُ ٱلسُّفَهَآءُ وَلَٰكِن لَّا يَعۡلَمُونَ ۝١٣

13. “ಸಹಾಬಿಗಳು (ಪ್ರವಾದಿಯ ಸಂಗಡಿಗರು) ವಿಶ್ವಾಸವಿಟ್ಟಂತೆ ನೀವೂ ವಿಶ್ವಾಸವಿಡಿ” ಎಂದು ಅವರೊಡನೆ ಹೇಳಲಾದರೆ, ಅವರು ಕೇಳುತ್ತಾರೆ: “ಆ ಅವಿವೇಕಿಗಳು ವಿಶ್ವಾಸವಿಟ್ಟಂತೆ ನಾವು ವಿಶ್ವಾಸವಿಡಬೇಕೇ?” ತಿಳಿಯಿರಿ! ನಿಶ್ಚಯವಾಗಿಯೂ ಅವರೇ ಅವಿವೇಕಿಗಳು. ಆದರೆ ಅವರು ಅದನ್ನು ತಿಳಿಯುವುದಿಲ್ಲ.

وَإِذَا لَقُواْ ٱلَّذِينَ ءَامَنُواْ قَالُوٓاْ ءَامَنَّا وَإِذَا خَلَوۡاْ إِلَىٰ شَيَٰطِينِهِمۡ قَالُوٓاْ إِنَّا مَعَكُمۡ إِنَّمَا نَحۡنُ مُسۡتَهۡزِءُونَ ۝١٤

14. ಸತ್ಯವಿಶ್ವಾಸಿಗಳನ್ನು ಭೇಟಿಯಾದಾಗ ಅವರು ಹೇಳುತ್ತಾರೆ: “ನಾವು ವಿಶ್ವಾಸವಿಟ್ಟಿದ್ದೇವೆ.” ಆದರೆ, ಅವರು ತಮ್ಮ ಶೈತಾನರ (ಮುಖಂಡರ) ಬಳಿ ಒಂಟಿಯಾಗಿರುವಾಗ ಹೇಳುತ್ತಾರೆ: “ನಿಜವಾಗಿಯೂ ನಾವು ನಿಮ್ಮ ಜೊತೆಯಲ್ಲೇ ಇದ್ದೇವೆ. ನಾವು ಕೇವಲ ತಮಾಷೆ ಮಾಡುತ್ತಿದ್ದೆವು.”

ٱللَّهُ يَسۡتَهۡزِئُ بِهِمۡ وَيَمُدُّهُمۡ فِي طُغۡيَٰنِهِمۡ يَعۡمَهُونَ ۝١٥

15. ಅಲ್ಲಾಹು ಕೂಡ ಅವರನ್ನು ತಮಾಷೆ ಮಾಡುತ್ತಾನೆ ಮತ್ತು ಅವರ ಅತಿರೇಕಗಳಲ್ಲಿ ಅಂಧವಾಗಿ ವಿಹರಿಸುವಂತೆ ಅವರನ್ನು ಬಿಟ್ಟುಬಿಡುತ್ತಾನೆ.[2]

---

[1] ಕಪಟವಿಶ್ವಾಸಿಗಳ ಹೃದಯಗಳಲ್ಲಿ ಕಪಟತನ ಮತ್ತು ಸತ್ಯನಿಷೇಧದ ರೋಗವಿದೆ. ಅವರು ಅದನ್ನು ಗುಣಪಡಿಸುವ ಗೋಜಿಗೆ ಹೋಗದಿದ್ದರೆ ಅದು ಇನ್ನಷ್ಟು ಉಲ್ಬಣವಾಗುತ್ತದೆ.

[2] ಇದರ ಅರ್ಥವೇನೆಂದರೆ, ಅವರು ಸತ್ಯವಿಶ್ವಾಸಿಗಳನ್ನು ಯಾವ ರೀತಿಯಲ್ಲಿ ತಮಾಷೆ ಮಾಡುತ್ತಾ ಅವಹೇಳನ ಮಾಡುತ್ತಾರೋ ಅದೇ ರೀತಿ

16. ಅವರೇ ಸನ್ಮಾರ್ಗದ ಬದಲಿಗೆ ದುರ್ಮಾರ್ಗವನ್ನು ಖರೀದಿಸಿದವರು. ಆದ್ದರಿಂದ, ಅವರ ವ್ಯಾಪಾರವು ಲಾಭಕರವಾ-ಗಲಿಲ್ಲ; ಅವರು ಸನ್ಮಾರ್ಗಿಗಳಾಗಲೂ ಇಲ್ಲ.

أُوْلَٰٓئِكَ ٱلَّذِينَ ٱشۡتَرَوُاْ ٱلضَّلَٰلَةَ بِٱلۡهُدَىٰ فَمَا رَبِحَت تِّجَٰرَتُهُمۡ وَمَا كَانُواْ مُهۡتَدِينَ ١٦

17. ಅವರ ಉದಾಹರಣೆಯು ಬೆಂಕಿಯುರಿಸಿದ ಒಬ್ಬ ವ್ಯಕ್ತಿಯಂತೆ. ಅದು ಅವನ ಪರಿಸರವನ್ನು ಬೆಳಗಿದಾಗ, ಅಲ್ಲಾಹು ಅವರ ಬೆಳಕನ್ನು ನಿವಾರಿಸಿ ಏನೂ ಕಾಣದಂತಹ ಅಂಧಕಾರದಲ್ಲಿ ಅವರನ್ನು ಬಿಟ್ಟುಬಿಟ್ಟನು.

مَثَلُهُمۡ كَمَثَلِ ٱلَّذِي ٱسۡتَوۡقَدَ نَارٗا فَلَمَّآ أَضَآءَتۡ مَا حَوۡلَهُۥ ذَهَبَ ٱللَّهُ بِنُورِهِمۡ وَتَرَكَهُمۡ فِي ظُلُمَٰتٖ لَّا يُبۡصِرُونَ ١٧

18. ಅವರು ಕಿವುಡರು, ಮೂಕರು ಮತ್ತು ಕುರುಡರು. ಆದ್ದರಿಂದ ಅವರು (ಸತ್ಯಮಾರ್ಗಕ್ಕೆ) ಮರಳಿ ಬರುವುದಿಲ್ಲ.

صُمُّۢ بُكۡمٌ عُمۡيٞ فَهُمۡ لَا يَرۡجِعُونَ ١٨

19. ಅಥವಾ (ಅವರ ಉದಾಹರಣೆಯು) ಆಕಾಶದಿಂದ ಸುರಿಯುವ ಜಡಿಮಳೆಯಂತೆ; ಅದರಲ್ಲಿ ಅಂಧಕಾರಗಳು, ಸಿಡಿಲು ಮತ್ತು ಮಿಂಚುಗಳಿವೆ. ಸಿಡಿಲಿನ ಆರ್ಭಟದಿಂದ ಸಾವಿಗೆ ಹೆದರಿ ಅವರು ತಮ್ಮ ಬೆರಳುಗಳನ್ನು ಕಿವಿಗಳಲ್ಲಿಡುತ್ತಾರೆ. ಅಲ್ಲಾಹು ಸತ್ಯನಿಷೇಧಿಗ-ಳನ್ನು ಸುತ್ತುವರಿದಿದ್ದಾನೆ.

أَوۡ كَصَيِّبٖ مِّنَ ٱلسَّمَآءِ فِيهِ ظُلُمَٰتٞ وَرَعۡدٞ وَبَرۡقٞ يَجۡعَلُونَ أَصَٰبِعَهُمۡ فِيٓ ءَاذَانِهِم مِّنَ ٱلصَّوَٰعِقِ حَذَرَ ٱلۡمَوۡتِۚ وَٱللَّهُ مُحِيطُۢ بِٱلۡكَٰفِرِينَ ١٩

20. ಮಿಂಚು ಇನ್ನೇನು ಅವರ ದೃಷ್ಟಿಗಳನ್ನು ಕಸಿಯುವುದರಲ್ಲಿದೆ. ಅದು ಅವರಿಗೆ ಬೆಳಕು ನೀಡಿದಾಗಲೆಲ್ಲಾ ಅವರು ಅದರಲ್ಲಿ ನಡೆಯುತ್ತಾರೆ. ಕತ್ತಲೆ ಆವರಿಸಿದಾಗ ಅವರು ನಿಂತುಬಿಡುತ್ತಾರೆ. ಅಲ್ಲಾಹು ಇಚ್ಛಿಸಿದರೆ ಅವರ ಶ್ರವಣ ಮತ್ತು ದೃಷ್ಟಿಯನ್ನು ತೆಗೆ-ದುಬಿಡುತ್ತಿದ್ದನು. ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನು.

يَكَادُ ٱلۡبَرۡقُ يَخۡطَفُ أَبۡصَٰرَهُمۡۖ كُلَّمَآ أَضَآءَ لَهُم مَّشَوۡاْ فِيهِ وَإِذَآ أَظۡلَمَ عَلَيۡهِمۡ قَامُواْۚ وَلَوۡ شَآءَ ٱللَّهُ لَذَهَبَ بِسَمۡعِهِمۡ وَأَبۡصَٰرِهِمۡۚ إِنَّ ٱللَّهَ عَلَىٰ كُلِّ شَيۡءٖ قَدِيرٞ ٢٠

21. ಓ ಮನುಷ್ಯರೇ! ನಿಮ್ಮನ್ನು ಮತ್ತು ನಿಮ್ಮ ಪೂರ್ವಜರನ್ನು ಸೃಷ್ಟಿಸಿದ ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಆರಾಧಿಸಿರಿ. ನೀವು ದೇವಭಯವುಳ್ಳವರಾಗುವುದಕ್ಕಾಗಿ.

يَٰٓأَيُّهَا ٱلنَّاسُ ٱعۡبُدُواْ رَبَّكُمُ ٱلَّذِي خَلَقَكُمۡ وَٱلَّذِينَ مِن قَبۡلِكُمۡ لَعَلَّكُمۡ تَتَّقُونَ ٢١

22. (ಅವನು ಯಾರೆಂದರೆ) ನಿಮಗೋಸ್ಕರ ಭೂಮಿಯನ್ನು ಹಾಸನ್ನಾಗಿ ಮತ್ತು ಆಕಾಶವನ್ನು ಛಾವಣಿಯನ್ನಾಗಿ ಮಾಡಿಕೊಟ್ಟವನು. ಆಕಾಶದಿಂದ ಮಳೆಯನ್ನು ಸುರಿಸಿ ಅದರಿಂದ ನಿಮ್ಮ ಆಹಾರಕ್ಕಾಗಿ ಹಣ್ಣು-ಹಂಪಲುಗಳನ್ನು ಉತ್ಪಾದಿಸಿ-ಕೊಟ್ಟವನು. ಆದ್ದರಿಂದ, ಇವೆಲ್ಲವನ್ನೂ ತಿಳಿದೂ ಸಹ ನೀವು ಅಲ್ಲಾಹನಿಗೆ ಸರಿಸಾಟಿಗಳನ್ನು ನಿಶ್ಚಯಿಸಬೇಡಿ.

ٱلَّذِي جَعَلَ لَكُمُ ٱلۡأَرۡضَ فِرَٰشٗا وَٱلسَّمَآءَ بِنَآءٗ وَأَنزَلَ مِنَ ٱلسَّمَآءِ مَآءٗ فَأَخۡرَجَ بِهِۦ مِنَ ٱلثَّمَرَٰتِ رِزۡقٗا لَّكُمۡۖ فَلَا تَجۡعَلُواْ لِلَّهِ أَندَادٗا وَأَنتُمۡ تَعۡلَمُونَ ٢٢

---

ಅಲ್ಲಾಹು ಕೂಡ ಅವರನ್ನು ಅವಹೇಳನ ಮಾಡುತ್ತಾನೆ. ಅಂದರೆ ಅವರು ತಿರಸ್ಕಾರ ಮತ್ತು ನಿಂದನೆಗೆ ಒಳಗಾಗುವಂತೆ ಮಾಡುತ್ತಾನೆ. ವಾಸ್ತವವಾಗಿ, ಇದು ಅಲ್ಲಾಹು ಅವರನ್ನು ಅವಹೇಳನ ಮಾಡುವುದಲ್ಲ; ಬದಲಿಗೆ ಅವರು ಮಾಡುವ ತಮಾಷೆ ಮತ್ತು ಅವಹೇಳನಕ್ಕೆ ಶಿಕ್ಷೆ ನೀಡುವುದಾಗಿದೆ.

23. ನಾವು ನಮ್ಮ ದಾಸನಿಗೆ ಅವತೀರ್ಣಗೊಳಿಸಿದ (ಕುರ್‌ಆನ್) ಬಗ್ಗೆ ನಿಮಗೇನಾದರೂ ಸಂದೇಹವಿದ್ದರೆ, ಅದರಂತಿರುವ ಒಂದು ಸೂರವನ್ನು (ಅಧ್ಯಾಯವನ್ನು) ರಚಿಸಿ ತನ್ನಿರಿ; ಅಲ್ಲಾಹನ ಹೊರತು ನಿಮ್ಮ ಎಲ್ಲಾ ಸಹಾಯಕರನ್ನು ಕರೆಯಿರಿ; ನೀವು ಸತ್ಯವಂತರಾಗಿದ್ದರೆ.

وَإِن كُنتُمۡ فِي رَيۡبٖ مِّمَّا نَزَّلۡنَا عَلَىٰ عَبۡدِنَا فَأۡتُواْ بِسُورَةٖ مِّن مِّثۡلِهِۦ وَٱدۡعُواْ شُهَدَآءَكُم مِّن دُونِ ٱللَّهِ إِن كُنتُمۡ صَٰدِقِينَ ٢٣

24. ನಿಮಗೆ ಅದನ್ನು ಮಾಡಲು ಸಾಧ್ಯವಾಗದಿದ್ದರೆ—ಅದನ್ನು ಮಾಡಲು ನಿಮಗೆ ಎಂದಿಗೂ ಸಾಧ್ಯವಾಗುವುದಿಲ್ಲ. ಆದ್ದರಿಂದ ನೀವು ಆ ನರಕವನ್ನು ಭಯಪಡಿರಿ; ಅದರ ಇಂಧನವು ಮನುಷ್ಯರು ಮತ್ತು ಕಲ್ಲುಗಳಾಗಿದ್ದಾರೆ. ಅದನ್ನು ಸತ್ಯನಿಷೇಧಿಗಳಿಗಾಗಿ ಸಿದ್ಧಗೊಳಿಸಲಾಗಿದೆ.

فَإِن لَّمۡ تَفۡعَلُواْ وَلَن تَفۡعَلُواْ فَٱتَّقُواْ ٱلنَّارَ ٱلَّتِي وَقُودُهَا ٱلنَّاسُ وَٱلۡحِجَارَةُۖ أُعِدَّتۡ لِلۡكَٰفِرِينَ ٢٤

25. ಸತ್ಯವಿಶ್ವಾಸಿಗಳು ಹಾಗೂ ಸತ್ಕರ್ಮವೆಸಗಿದವರಿಗೆ ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳಿವೆಯೆಂಬ ಸುವಾರ್ತೆಯನ್ನು ತಿಳಿಸಿರಿ. ಅವರಿಗೆ ಅದರ ಒಂದೊಂದು ಹಣ್ಣನ್ನು ಆಹಾರವಾಗಿ ನೀಡಲಾಗುವಾಗಲೆಲ್ಲಾ ಅವರು ಹೇಳುವರು: "ಇದು ನಮಗೆ ಮುಂಚೆ ನೀಡಲಾದದ್ದೇ ಅಲ್ಲವೇ!" ವಾಸ್ತವವಾಗಿ, ಅವರಿಗೆ ಅದನ್ನು ಹೋಲಿಕೆಯಿರುವ ರೂಪದಲ್ಲಿ ನೀಡಲಾಗಿದೆ.[1] ಅವರಿಗೆ ಅಲ್ಲಿ ಪರಿಶುದ್ಧ ಸಂಗಾತಿಗಳಿದ್ದಾರೆ; ಅವರು ಅಲ್ಲಿ ಶಾಶ್ವತವಾಗಿ ವಾಸಿಸುವರು.

وَبَشِّرِ ٱلَّذِينَ ءَامَنُواْ وَعَمِلُواْ ٱلصَّٰلِحَٰتِ أَنَّ لَهُمۡ جَنَّٰتٖ تَجۡرِي مِن تَحۡتِهَا ٱلۡأَنۡهَٰرُۖ كُلَّمَا رُزِقُواْ مِنۡهَا مِن ثَمَرَةٖ رِّزۡقٗا قَالُواْ هَٰذَا ٱلَّذِي رُزِقۡنَا مِن قَبۡلُۖ وَأُتُواْ بِهِۦ مُتَشَٰبِهٗاۖ وَلَهُمۡ فِيهَآ أَزۡوَٰجٞ مُّطَهَّرَةٞۖ وَهُمۡ فِيهَا خَٰلِدُونَ ٢٥

26. ನಿಶ್ಚಯವಾಗಿಯೂ ಅಲ್ಲಾಹು ಒಂದು ಸೊಳ್ಳೆಯನ್ನು ಅಥವಾ ಅದಕ್ಕಿಂತ ಕೀಳಾದುದನ್ನು ಉದಾಹರಣೆಯಾಗಿ ತೋರಿಸಲು ಸಂಕೋಚಪಡುವುದಿಲ್ಲ. ಸತ್ಯವಿಶ್ವಾಸಿಗಳು ಅದು ತಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಸತ್ಯವೆಂದು ತಿಳಿಯುತ್ತಾರೆ. ಆದರೆ, ಸತ್ಯನಿಷೇಧಿಗಳು ಕೇಳುತ್ತಾರೆ: "ಈ ಹೋಲಿಕೆಯಿಂದ ಅಲ್ಲಾಹು ಉದ್ದೇಶಿಸುವುದೇನು?" ಇದರ ಮೂಲಕ ಅಲ್ಲಾಹು ಅನೇಕ ಜನರನ್ನು ದಾರಿತಪ್ಪಿಸುತ್ತಾನೆ ಮತ್ತು ಅನೇಕ ಜನರಿಗೆ ಸನ್ಮಾರ್ಗವನ್ನು ತೋರಿಸುತ್ತಾನೆ. ಅವನು ಇದರ ಮೂಲಕ ದುಷ್ಕರ್ಮಿಗಳನ್ನಲ್ಲದೆ ಇನ್ನಾರನ್ನೂ ದಾರಿತಪ್ಪಿಸುವುದಿಲ್ಲ.

إِنَّ ٱللَّهَ لَا يَسۡتَحۡيِۦٓ أَن يَضۡرِبَ مَثَلٗا مَّا بَعُوضَةٗ فَمَا فَوۡقَهَاۚ فَأَمَّا ٱلَّذِينَ ءَامَنُواْ فَيَعۡلَمُونَ أَنَّهُ ٱلۡحَقُّ مِن رَّبِّهِمۡۖ وَأَمَّا ٱلَّذِينَ كَفَرُواْ فَيَقُولُونَ مَاذَآ أَرَادَ ٱللَّهُ بِهَٰذَا مَثَلٗاۘ يُضِلُّ بِهِۦ كَثِيرٗا وَيَهۡدِي بِهِۦ كَثِيرٗاۚ وَمَا يُضِلُّ بِهِۦٓ إِلَّا ٱلۡفَٰسِقِينَ ٢٦

27. ಅವರು (ದುಷ್ಕರ್ಮಿಗಳು) ಯಾರೆಂದರೆ, ಅಲ್ಲಾಹನ ಕರಾರನ್ನು—ಅದು ಸದೃಢವಾದ ಬಳಿಕವೂ—ಮುರಿಯುವವರು, ಅಲ್ಲಾಹು

ٱلَّذِينَ يَنقُضُونَ عَهۡدَ ٱللَّهِ مِنۢ بَعۡدِ مِيثَٰقِهِۦ وَيَقۡطَعُونَ مَآ أَمَرَ ٱللَّهُ بِهِۦٓ أَن

[1] ಹೋಲಿಕೆಯಿರುವ ರೂಪದಲ್ಲಿ ಎಂದರೆ ಒಂದೋ ಸ್ವರ್ಗದಲ್ಲಿರುವ ಹಣ್ಣುಗಳು ಪರಸ್ಪರ ಒಂದನ್ನೊಂದು ಹೋಲುತ್ತವೆ; ಅಥವಾ ಅವು ಇಹಲೋಕದ ಹಣ್ಣುಗಳ ಹೋಲಿಕೆಯನ್ನು ಹೊಂದಿರುತ್ತವೆ. ಹೋಲಿಕೆಯಿರುವುದು ರೂಪ, ಆಕಾರ, ಹೆಸರು ಅಥವಾ ಬಣ್ಣಗಳಲ್ಲಿ ಮಾತ್ರವೇ ಹೊರತು ಅವುಗಳ ರುಚಿ ಮತ್ತು ಗುಣಮಟ್ಟದಲ್ಲಲ್ಲ.

ಜೋಡಿಸಲು ಆದೇಶಿಸಿದ್ದನ್ನು ಕಡಿಯುವವರು, ಮತ್ತು ಭೂಮಿಯಲ್ಲಿ ಕಿಡಿಗೇಡಿತನ ಮಾಡುವವರು. ಅವರೇ ನಷ್ಟ ಹೊಂದಿದವರು.

يُوصَلَ وَيُفْسِدُونَ فِى ٱلْأَرْضِ ۚ أُو۟لَـٰٓئِكَ هُمُ
ٱلْخَـٰسِرُونَ ٢٧

---

28. ನೀವು ಅಲ್ಲಾಹನನ್ನು ಹೇಗೆ ನಿಷೇಧಿಸುತ್ತೀರಿ? ವಾಸ್ತವವಾಗಿ, ನೀವು ನಿರ್ಜೀವಿಗಳಾಗಿದ್ದಿರಿ ಮತ್ತು ಅವನು ನಿಮಗೆ ಜೀವವನ್ನು ನೀಡಿದನು; ನಂತರ ಅವನು ನಿಮಗೆ ಸಾವನ್ನು ನೀಡುತ್ತಾನೆ. ನಂತರ ಅವನು ನಿಮಗೆ (ಪುನಃ) ಜೀವವನ್ನು ನೀಡುತ್ತಾನೆ. ನಂತರ ನಿಮ್ಮನ್ನು ಅವನ ಬಳಿಗೇ ಮರಳಿಸಲಾಗುತ್ತದೆ.

كَيْفَ تَكْفُرُونَ بِٱللَّهِ وَكُنتُمْ أَمْوَٰتًا
فَأَحْيَـٰكُمْ ۖ ثُمَّ يُمِيتُكُمْ ثُمَّ يُحْيِيكُمْ ثُمَّ إِلَيْهِ
تُرْجَعُونَ ٢٨

---

29. ಭೂಮಿಯಲ್ಲಿರುವ ಎಲ್ಲಾ ವಸ್ತುಗಳನ್ನೂ ನಿಮಗಾಗಿ ಸೃಷ್ಟಿಸಿದವನು ಅವನೇ. ನಂತರ ಅವನು ಆಕಾಶಕ್ಕೇರಿ, ಅದನ್ನು ಏಳಾಕಾಶಗಳಾಗಿ ಸರಿಪಡಿಸಿದನು. ಅವನು ಎಲ್ಲಾ ವಿಷಯಗಳನ್ನೂ ತಿಳಿದವನಾಗಿದ್ದಾನೆ.

هُوَ ٱلَّذِى خَلَقَ لَكُم مَّا فِى ٱلْأَرْضِ جَمِيعًا ثُمَّ
ٱسْتَوَىٰٓ إِلَى ٱلسَّمَآءِ فَسَوَّىٰهُنَّ سَبْعَ سَمَـٰوَٰتٍ ۚ
وَهُوَ بِكُلِّ شَىْءٍ عَلِيمٌ ٢٩

---

30. ನಿಮ್ಮ ಪರಿಪಾಲಕನು (ಅಲ್ಲಾಹು) ದೇವದೂತರೊಡನೆ, "ನಾನು ಭೂಮಿಯಲ್ಲಿ ಒಬ್ಬ ಉತ್ತರಾಧಿಕಾರಿಯನ್ನು[1] (ಮನುಷ್ಯನನ್ನು) ಮಾಡುತ್ತೇನೆ" ಎಂದು ಹೇಳಿದ ಸಂದರ್ಭ. ಅವರು ಕೇಳಿದರು: "ಅಲ್ಲಿ ಕಿಡಿಗೇಡಿತನ ಮಾಡುವವನನ್ನು ಮತ್ತು ರಕ್ತ ಹರಿಸುವವನನ್ನು ಮಾಡುವೆಯಾ? ನಾವಂತೂ ನಿನ್ನನ್ನು ಸ್ತುತಿಸುತ್ತಾ ನಿನ್ನ ಪರಿಶುದ್ಧಿಯನ್ನು ಕೊಂಡಾಡುತ್ತೇವೆ ಮತ್ತು ನಿನ್ನ ಪವಿತ್ರತೆಯನ್ನು ಹೊಗಳುತ್ತೇವೆ." ಅಲ್ಲಾಹು ಹೇಳಿದನು: "ನಿಶ್ಚಯವಾಗಿಯೂ, ನಿಮಗೆ ತಿಳಿಯದೇ ಇರುವುದು ನನಗೆ ತಿಳಿದಿದೆ."

وَإِذْ قَالَ رَبُّكَ لِلْمَلَـٰٓئِكَةِ إِنِّى جَاعِلٌ فِى ٱلْأَرْضِ
خَلِيفَةً ۖ قَالُوٓا۟ أَتَجْعَلُ فِيهَا مَن يُفْسِدُ فِيهَا
وَيَسْفِكُ ٱلدِّمَآءَ وَنَحْنُ نُسَبِّحُ بِحَمْدِكَ وَنُقَدِّسُ
لَكَ ۖ قَالَ إِنِّىٓ أَعْلَمُ مَا لَا تَعْلَمُونَ ٣٠

---

31. ಅಲ್ಲಾಹು ಆದಮರಿಗೆ ಎಲ್ಲಾ ಹೆಸರುಗಳನ್ನು ಕಲಿಸಿದನು. ನಂತರ ಅವುಗಳನ್ನು ದೇವದೂತರುಗಳಿಗೆ ತೋರಿಸಿ ಹೇಳಿದನು: "ನೀವು ಸತ್ಯವಂತರಾಗಿದ್ದರೆ ಇವುಗಳ ಹೆಸರುಗಳನ್ನು ಹೇಳಿರಿ."

وَعَلَّمَ ءَادَمَ ٱلْأَسْمَآءَ كُلَّهَا ثُمَّ عَرَضَهُمْ عَلَى
ٱلْمَلَـٰٓئِكَةِ فَقَالَ أَنۢبِـُٔونِى بِأَسْمَآءِ هَـٰٓؤُلَآءِ إِن
كُنتُمْ صَـٰدِقِينَ ٣١

---

32. ಅವರು ಹೇಳಿದರು: "ನಿನ್ನ ಪರಿಶುದ್ಧಿಯನ್ನು ನಾವು ಕೊಂಡಾಡುತ್ತೇವೆ. ನೀನು ನಮಗೆ ಕಲಿಸಿಕೊಟ್ಟದ್ದರ ಹೊರತು ಬೇರೇನೂ ನಮಗೆ ತಿಳಿದಿಲ್ಲ; ನಿಶ್ಚಯವಾಗಿಯೂ ನೀನು ಸರ್ವಜ್ಞನು ಮತ್ತು ವಿವೇಕವಂತನಾಗಿರುವೆ."

قَالُوا۟ سُبْحَـٰنَكَ لَا عِلْمَ لَنَآ إِلَّا مَا عَلَّمْتَنَآ ۖ إِنَّكَ
أَنتَ ٱلْعَلِيمُ ٱلْحَكِيمُ ٣٢

---

33. ಅಲ್ಲಾಹು ಹೇಳಿದನು: "ಓ ಆದಮರೇ! ಅವರಿಗೆ ಅವುಗಳ

قَالَ يَـٰٓـَٔادَمُ أَنۢبِئْهُم بِأَسْمَآئِهِمْ ۖ فَلَمَّآ أَنۢبَأَهُم

---

[1] ಉತ್ತರಾಧಿಕಾರಿ ಎಂದರೆ ಅಲ್ಲಾಹನ ಉತ್ತರಾಧಿಕಾರಿಯಲ್ಲ. ಬದಲಿಗೆ, ಭೂಮಿಯಲ್ಲಿ ತಲೆಮಾರಿನ ನಂತರ ತಲೆಮಾರುಗಳಾಗಿ ಬರುವ ಮನುಷ್ಯರು.

بِأَسۡمَآئِهِمۡ قَالَ أَلَمۡ أَقُل لَّكُمۡ إِنِّيٓ أَعۡلَمُ غَيۡبَ ٱلسَّمَٰوَٰتِ وَٱلۡأَرۡضِ وَأَعۡلَمُ مَا تُبۡدُونَ وَمَا كُنتُمۡ تَكۡتُمُونَ ﴿٣٣﴾

ಹೆಸರುಗಳನ್ನು ಹೇಳಿಕೊಡಿ." ಆದಮ್ ಅವರಿಗೆ ಅವುಗಳ ಹೆಸರುಗಳನ್ನು ಹೇಳಿಕೊಟ್ಟಾಗ ಅಲ್ಲಾಹು ಹೇಳಿದನು: "ನಾನು ನಿಮಗೆ ಹೇಳಿರಲಿಲ್ಲವೇ? ನಿಶ್ಚಯವಾಗಿಯೂ, ಭೂಮ್ಯಾಕಾಶಗಳ ಅದೃಶ್ಯ ವಿಷಯಗಳನ್ನು ನಾನು ತಿಳಿದಿದ್ದೇನೆಂದು; ನೀವು ಬಹಿರಂಗಪಡಿಸುವುದನ್ನು ಹಾಗೂ ರಹಸ್ಯವಾಗಿಡುವುದನ್ನು ನಾನು ತಿಳಿದಿದ್ದೇನೆಂದು."

---

وَإِذۡ قُلۡنَا لِلۡمَلَٰٓئِكَةِ ٱسۡجُدُواْ لِأٓدَمَ فَسَجَدُوٓاْ إِلَّآ إِبۡلِيسَ أَبَىٰ وَٱسۡتَكۡبَرَ وَكَانَ مِنَ ٱلۡكَٰفِرِينَ ﴿٣٤﴾

34. ನಾವು ದೇವದೂತರೊಡನೆ ಹೇಳಿದ ಸಂದರ್ಭ: "ನೀವೆಲ್ಲರೂ ಆದಮರಿಗೆ ಸಾಷ್ಟಾಂಗ ಮಾಡಿರಿ."[1] ಅವರು ಸಾಷ್ಟಾಂಗ ಮಾಡಿದರು; ಇಬ್ಲೀಸನ ಹೊರತು.[2] ಅವನು (ಸಾಷ್ಟಾಂಗ ಮಾಡಲು) ನಿರಾಕರಿಸಿದನು ಮತ್ತು ಅಹಂಕಾರ ತೋರಿದನು. ಅವನು ಸತ್ಯನಿಷೇಧಿಗಳಲ್ಲಿ ಸೇರಿದವನಾದನು.

---

وَقُلۡنَا يَٰٓـَٔادَمُ ٱسۡكُنۡ أَنتَ وَزَوۡجُكَ ٱلۡجَنَّةَ وَكُلَا مِنۡهَا رَغَدًا حَيۡثُ شِئۡتُمَا وَلَا تَقۡرَبَا هَٰذِهِ ٱلشَّجَرَةَ فَتَكُونَا مِنَ ٱلظَّٰلِمِينَ ﴿٣٥﴾

35. ನಾವು ಹೇಳಿದೆವು: "ಓ ಆದಮರೇ! ನೀವು ಮತ್ತು ನಿಮ್ಮ ಪತ್ನಿ ಸ್ವರ್ಗದಲ್ಲಿ ವಾಸಿಸಿರಿ; ಅಲ್ಲಿ ನೀವು ಇಚ್ಛಿಸುವ ಎಲ್ಲಾ ಕಡೆಗಳಿಂದ ಯಥೇಷ್ಟವಾಗಿ ತಿನ್ನಿರಿ. ಆದರೆ ಈ ಮರದ ಹತ್ತಿರ ಹೋಗಬೇಡಿ. ಹಾಗೇನಾದರೂ ಹೋದರೆ ನೀವು ಅಕ್ರಮಿಗಳಲ್ಲಿ ಸೇರಿದವರಾಗುವಿರಿ."

---

فَأَزَلَّهُمَا ٱلشَّيۡطَٰنُ عَنۡهَا فَأَخۡرَجَهُمَا مِمَّا كَانَا فِيهِۖ وَقُلۡنَا ٱهۡبِطُواْ بَعۡضُكُمۡ لِبَعۡضٍ عَدُوّٞۖ وَلَكُمۡ فِي ٱلۡأَرۡضِ مُسۡتَقَرّٞ وَمَتَٰعٌ إِلَىٰ حِينٖ ﴿٣٦﴾

36. ಆದರೆ ಶೈತಾನನು ಅವರನ್ನು ತಪ್ಪುದಾರಿಗೆಳೆದು, ಅವರಿಬ್ಬರೂ ವಾಸವಾಗಿದ್ದಲ್ಲಿಂದ ಹೊರಹೋಗುವಂತೆ ಮಾಡಿದನು. ನಾವು ಹೇಳಿದೆವು: "ನೀವೆಲ್ಲರೂ ಇಳಿಯಿರಿ. ನೀವು ಪರಸ್ಪರ ವೈರಿಗಳಾಗಿದ್ದೀರಿ. ನಿಮಗೆ ಭೂಮಿಯಲ್ಲಿ ಒಂದು ಅವಧಿಯವರೆಗೆ ವಾಸಸ್ಥಳ ಹಾಗೂ ಜೀವನ ಸವಲತ್ತುಗಳಿವೆ."

---

فَتَلَقَّىٰٓ ءَادَمُ مِن رَّبِّهِۦ كَلِمَٰتٖ فَتَابَ عَلَيۡهِۚ إِنَّهُۥ هُوَ ٱلتَّوَّابُ ٱلرَّحِيمُ ﴿٣٧﴾

37. ಆದಮ್ ತಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಕೆಲವು ವಚನಗಳನ್ನು ಕಲಿತುಕೊಂಡರು.[3] ಅಲ್ಲಾಹು ಅವರ ಪಶ್ಚಾತ್ತಾ-ಪವನ್ನು ಸ್ವೀಕರಿಸಿದನು. ನಿಶ್ಚಯವಾಗಿಯೂ ಅವನು ಪಶ್ಚಾತ್ತಾಪ ಸ್ವೀಕರಿಸುವವನು ಮತ್ತು ಕರುಣೆ ತೋರುವವನಾಗಿದ್ದಾನೆ.

---

قُلۡنَا ٱهۡبِطُواْ مِنۡهَا جَمِيعٗاۖ فَإِمَّا يَأۡتِيَنَّكُم مِّنِّي

38. ನಾವು ಹೇಳಿದೆವು: "ನೀವೆಲ್ಲರೂ ಇಲ್ಲಿಂದ ಇಳಿಯಿರಿ. ನನ್ನಿಂದ

---

[1] ಸುಜೂದ್ ಎಂದರೆ ವಿನಯ ಮತ್ತು ವಿನಮ್ರತೆಯನ್ನು ವ್ಯಕ್ತಪಡಿಸುವುದು. ನೆಲದ ಮೇಲೆ ಹಣೆಯಿಟ್ಟು ಸಾಷ್ಟಾಂಗ ಮಾಡುವುದು ಇದರ ಪರಮೋಚ್ಛ ರೂಪವಾಗಿದೆ. ಪ್ರವಾದಿ ಮುಹಮ್ಮದ್ (ಅವರ ಮೇಲೆ ಶಾಂತಿಯಿರಲಿ) ರವರ ಶರಿಯತ್ (ಧರ್ಮಸಂಹಿತೆ) ನ ಪ್ರಕಾರ ಅಲ್ಲಾಹನಿಗೆ ಹೊರತು ಬೇರೆ ಯಾರಿಗೂ ಸಾಷ್ಟಾಂಗ ಮಾಡಬಾರದು.

[2] ಇಬ್ಲೀಸ್ ಜಿನ್ನ್ (ಯಕ್ಷ) ಗಳಲ್ಲಿ ಸೇರಿದವನು. ಅಲ್ಲಾಹು ಅವನಿಗೆ ಶ್ರೇಷ್ಠತೆ ನೀಡಿ ದೇವದೂತರೊಡನೆ ಸೇರಿಸಿದ್ದನು. ಆದ್ದರಿಂದ ಅಲ್ಲಾಹನ ಆದೇಶ ಪ್ರಕಾರ ಸಾಷ್ಟಾಂಗ ಮಾಡುವುದು ಅವನಿಗೂ ಕಡ್ಡಾಯವಾಗಿತ್ತು. ಆದರೆ ಅವನು ಆದಮರ ಮೇಲಿದ್ದ ಅಸೂಯೆ ಮತ್ತು ಅಹಂಕಾರದಿಂದ ಸಾಷ್ಟಾಂಗ ಮಾಡಲು ನಿರಾಕರಿಸಿದನು.

[3] ಈ ವಚನಗಳು ಏನೆಂದು ಸೂರ ಅಅ್ರಾಫ್ (7:23) ರಲ್ಲಿ ಉಲ್ಲೇಖಿಸಲಾಗಿದೆ.

ನಿಮಗೆ ಮಾರ್ಗದರ್ಶನವು ಬರುವಾಗ, ಆ ನನ್ನ ಮಾರ್ಗದರ್ಶನವನ್ನು ಯಾರು ಅನುಸರಿಸುತ್ತಾರೋ ಅವರಿಗೆ ಯಾವುದೇ ಭಯವಿಲ್ಲ; ಅವರು ದುಃಖಿಸುವುದೂ ಇಲ್ಲ.

هُدًى فَمَن تَبِعَ هُدَايَ فَلَا خَوْفٌ عَلَيْهِمْ وَلَا هُمْ يَحْزَنُونَ ٣٨

39. ಸತ್ಯನಿಷೇಧಿಗಳು ಹಾಗೂ ನಮ್ಮ ವಚನಗಳನ್ನು ತಿರಸ್ಕರಿಸಿದವರು ಯಾರೋ—ಅವರೇ ನರಕವಾಸಿಗಳು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು."

وَٱلَّذِينَ كَفَرُواْ وَكَذَّبُواْ بِـَٔايَٰتِنَآ أُوْلَٰٓئِكَ أَصْحَٰبُ ٱلنَّارِۖ هُمْ فِيهَا خَٰلِدُونَ ٣٩

40. ಓ ಇಸ್ರಾಯೇಲ್ ಮಕ್ಕಳೇ![1] ನಾನು ನಿಮಗೆ ಅನುಗ್ರಹಿಸಿದ ನನ್ನ ಅನುಗ್ರಹಗಳನ್ನು ಸ್ಮರಿಸಿರಿ ಮತ್ತು ನನ್ನ ಕರಾರನ್ನು ನೆರವೇರಿಸಿರಿ. ನಿಮ್ಮ ಕರಾರನ್ನು ನಾನೂ ನೆರವೇರಿಸುವೆನು. ನೀವು ನನ್ನನ್ನು ಮಾತ್ರ ಭಯಪಡಿರಿ.

يَٰبَنِيٓ إِسْرَٰٓءِيلَ ٱذْكُرُواْ نِعْمَتِيَ ٱلَّتِيٓ أَنْعَمْتُ عَلَيْكُمْ وَأَوْفُواْ بِعَهْدِيٓ أُوفِ بِعَهْدِكُمْ وَإِيَّٰيَ فَٱرْهَبُونِ ٤٠

41. ನಿಮ್ಮ ಬಳಿಯಿರುವ (ಗ್ರಂಥವನ್ನು) ದೃಢೀಕರಿಸುತ್ತಾ ನಾನು ಅವತೀರ್ಣಗೊಳಿಸಿದ (ಕುರ್‌ಆನ್‌ನಲ್ಲಿ) ವಿಶ್ವಾಸವಿಡಿ. ಅದನ್ನು ಮೊಟ್ಟಮೊದಲು ನಿಷೇಧಿಸುವವರು ನೀವಾಗಬೇಡಿ. ನನ್ನ ವಚನಗಳನ್ನು ಅಲ್ಪ ಬೆಲೆಗೆ ಮಾರಾಟ ಮಾಡಬೇಡಿ. ನನ್ನನ್ನು ಮಾತ್ರ ಭಯಪಡಿರಿ.

وَءَامِنُواْ بِمَآ أَنزَلْتُ مُصَدِّقًا لِّمَا مَعَكُمْ وَلَا تَكُونُوٓاْ أَوَّلَ كَافِرِۭ بِهِۦۖ وَلَا تَشْتَرُواْ بِـَٔايَٰتِي ثَمَنًا قَلِيلًا وَإِيَّٰيَ فَٱتَّقُونِ ٤١

42. ಸತ್ಯವನ್ನು ಮಿಥ್ಯದೊಂದಿಗೆ ಬೆರೆಸಬೇಡಿ. ತಿಳಿದವರಾಗಿದ್ದೂ ಸಹ ಸತ್ಯವನ್ನು ಮುಚ್ಚಿಡಬೇಡಿ.

وَلَا تَلْبِسُواْ ٱلْحَقَّ بِٱلْبَٰطِلِ وَتَكْتُمُواْ ٱلْحَقَّ وَأَنتُمْ تَعْلَمُونَ ٤٢

43. ನಮಾಝ್ ಸಂಸ್ಥಾಪಿಸಿರಿ ಮತ್ತು ಝಕಾತ್ ನೀಡಿರಿ; (ವಿಧೇಯತೆಯಿಂದ) ತಲೆಬಾಗುವವರೊಡನೆ ನೀವೂ ತಲೆಬಾಗಿರಿ.

وَأَقِيمُواْ ٱلصَّلَوٰةَ وَءَاتُواْ ٱلزَّكَوٰةَ وَٱرْكَعُواْ مَعَ ٱلرَّٰكِعِينَ ٤٣

44. ನೀವು ಜನರಿಗೆ ಒಳಿತನ್ನು ಆದೇಶಿಸುತ್ತಾ ನಿಮ್ಮನ್ನು ನೀವೇ ಮರೆತು ಬಿಡುತ್ತೀರಾ? ನೀವಾದರೋ ಗ್ರಂಥವನ್ನು ಪಠಿಸುತ್ತಿದ್ದೀರಿ! ನೀವು ಆಲೋಚಿಸುವುದಿಲ್ಲವೇ?

۞أَتَأْمُرُونَ ٱلنَّاسَ بِٱلْبِرِّ وَتَنسَوْنَ أَنفُسَكُمْ وَأَنتُمْ تَتْلُونَ ٱلْكِتَٰبَۚ أَفَلَا تَعْقِلُونَ ٤٤

45. ತಾಳ್ಮೆ ಮತ್ತು ನಮಾಝಿನ ಮೂಲಕ ಸಹಾಯವನ್ನು ಬೇಡಿರಿ. ವಿನಮ್ರತೆಯಿಲ್ಲದವರಿಗೆ ಖಂಡಿತವಾಗಿಯೂ ಅದು ಬಹಳ ಕಷ್ಟವಾಗಿದೆ.

وَٱسْتَعِينُواْ بِٱلصَّبْرِ وَٱلصَّلَوٰةِۚ وَإِنَّهَا لَكَبِيرَةٌ إِلَّا عَلَى ٱلْخَٰشِعِينَ ٤٥

46. ಅವರು (ವಿನಮ್ರತೆಯುಳ್ಳವರು) ಯಾರೆಂದರೆ, ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಖಂಡಿತವಾಗಿಯೂ

ٱلَّذِينَ يَظُنُّونَ أَنَّهُم مُّلَٰقُواْ رَبِّهِمْ وَأَنَّهُمْ إِلَيْهِ

[1] ಇಸ್ರಾಯೇಲ್ ಪ್ರವಾದಿ ಯಾಕೂಬರ (ಅವರ ಮೇಲೆ ಶಾಂತಿಯಿರಲಿ) ಇನ್ನೊಂದು ಹೆಸರು. ಅವರಿಗೆ ಹನ್ನೆರಡು ಮಕ್ಕಳು. ಇವರ ಸಂತಾನ ಪರಂಪರೆಯು ಹನ್ನೆರಡು ಗೋತ್ರಗಳಾಗಿ ವಿಂಗಡನೆಯಾಗಿದ್ದವು. ಇವರನ್ನು ಇಸ್ರಾಯೇಲ್ ಮಕ್ಕಳು ಎಂದು ಕರೆಯಲಾಗುತ್ತದೆ. ಯಹೂದಿಗಳು ಮತ್ತು ಕ್ರೈಸ್ತರು ಈ ಪರಂಪರೆಯಲ್ಲಿ ಸೇರಿದವರು.

ಭೇಟಿಯಾಗಲಿದ್ದೇವೆ ಮತ್ತು ಅವನ ಬಳಿಗೇ ಮರಳಲಿದ್ದೇವೆ ಎಂದು ದೃಢವಾಗಿ ನಂಬುವವರು.

رَٰجِعُونَ ﴿٤٦﴾

---

47. ಓ ಇಸ್ರಾಯೇಲ್ ಮಕ್ಕಳೇ! ನಾನು ನಿಮಗೆ ಅನುಗ್ರಹಿಸಿದ ನನ್ನ ಅನುಗ್ರಹವನ್ನು, ಮತ್ತು ನಾನು ನಿಮ್ಮನ್ನು ಸರ್ವಲೋಕದವ-ರಿಗಿಂತ (ಎಲ್ಲಾ ಮನುಷ್ಯರಿಗಿಂತ) ಶ್ರೇಷ್ಠಗೊಳಿಸಿದ್ದನ್ನು ಸ್ಮರಿಸಿರಿ.

يَٰبَنِيٓ إِسۡرَٰٓءِيلَ ٱذۡكُرُواْ نِعۡمَتِيَ ٱلَّتِيٓ أَنۡعَمۡتُ
عَلَيۡكُمۡ وَأَنِّي فَضَّلۡتُكُمۡ عَلَى ٱلۡعَٰلَمِينَ ﴿٤٧﴾

---

48. ಒಬ್ಬ ವ್ಯಕ್ತಿ ಇನ್ನೊಬ್ಬ ವ್ಯಕ್ತಿಗೆ ಯಾವುದೇ ಉಪಕಾರ ಮಾಡದ, ಅವನಿಂದ ಯಾವುದೇ ಶಿಫಾರಸು ಸ್ವೀಕರಿಸದ, ಅವನಿಂದ ಯಾವುದೇ ಪರಿಹಾರವನ್ನು ಪಡೆಯದ ಮತ್ತು ಅವರಿಗೆ ಯಾವುದೇ ಸಹಾಯವು ದೊರೆಯದ ಒಂದು ದಿನವನ್ನು (ಪುನರುತ್ಥಾನ ದಿನವನ್ನು) ಭಯಪಡಿರಿ.

وَٱتَّقُواْ يَوۡمٗا لَّا تَجۡزِي نَفۡسٌ عَن نَّفۡسٖ شَيۡـٔٗا
وَلَا يُقۡبَلُ مِنۡهَا شَفَٰعَةٞ وَلَا يُؤۡخَذُ مِنۡهَا عَدۡلٞ
وَلَا هُمۡ يُنصَرُونَ ﴿٤٨﴾

---

49. ನಾವು ನಿಮ್ಮನ್ನು ಫರೋಹನ ಜನರಿಂದ ರಕ್ಷಿಸಿದ ಸಂದರ್ಭ(ವನ್ನು ಸ್ಮರಿಸಿ). ಅವರು ನಿಮಗೆ ಕಠೋರ ಹಿಂಸೆ ನೀಡುತ್ತಿದ್ದರು; ನಿಮ್ಮ ಗಂಡು ಮಕ್ಕಳ ಕತ್ತು ಕೊಯ್ಯುತ್ತಿದ್ದರು ಮತ್ತು ನಿಮ್ಮ ಹೆಣ್ಣು ಮಕ್ಕಳನ್ನು ಜೀವಂತ ಉಳಿಸುತ್ತಿದ್ದರು. ಅದರಲ್ಲಿ (ನಿಮ್ಮನ್ನು ರಕ್ಷಿ-ಸಿದ್ದರಲ್ಲಿ) ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಮಹಾ ಪರೀಕ್ಷೆಯಿತ್ತು.

وَإِذۡ نَجَّيۡنَٰكُم مِّنۡ ءَالِ فِرۡعَوۡنَ يَسُومُونَكُمۡ
سُوٓءَ ٱلۡعَذَابِ يُذَبِّحُونَ أَبۡنَآءَكُمۡ وَيَسۡتَحۡيُونَ
نِسَآءَكُمۡۚ وَفِي ذَٰلِكُم بَلَآءٞ مِّن رَّبِّكُمۡ
عَظِيمٞ ﴿٤٩﴾

---

50. ನಾವು ಕಡಲನ್ನು ಸೀಳಿ ನಿಮ್ಮನ್ನು ರಕ್ಷಿಸಿದ, ಮತ್ತು ನೀವು ನೋಡುತ್ತಿದ್ದಂತೆಯೇ ಫರೋಹನ ಜನರನ್ನು ಮುಳುಗಿಸಿದ ಸಂದರ್ಭ(ವನ್ನು ಸ್ಮರಿಸಿ).

وَإِذۡ فَرَقۡنَا بِكُمُ ٱلۡبَحۡرَ فَأَنجَيۡنَٰكُمۡ وَأَغۡرَقۡنَآ
ءَالَ فِرۡعَوۡنَ وَأَنتُمۡ تَنظُرُونَ ﴿٥٠﴾

---

51. ನಾವು ಮೂಸಾರಿಗೆ ನಲ್ವತ್ತು ರಾತ್ರಿಗಳನ್ನು ವಾಗ್ದಾನ ಮಾಡಿದ ಸಂದರ್ಭ. ನಂತರ, ಅವರ (ನಿರ್ಗಮನದ) ಬಳಿಕ ನೀವು ಕರುವನ್ನು ದೇವರಾಗಿ ಮಾಡಿಕೊಂಡಿರಿ ಮತ್ತು ಅಕ್ರಮಿಗಳಾಗಿ ಬಿಟ್ಟಿರಿ.[1]

وَإِذۡ وَٰعَدۡنَا مُوسَىٰٓ أَرۡبَعِينَ لَيۡلَةٗ ثُمَّ ٱتَّخَذۡتُمُ
ٱلۡعِجۡلَ مِنۢ بَعۡدِهِۦ وَأَنتُمۡ ظَٰلِمُونَ ﴿٥١﴾

---

52. ನಂತರ ಅದರ ಬಳಿಕವೂ ನಾವು ನಿಮ್ಮನ್ನು ಕ್ಷಮಿಸಿದೆವು; ನೀವು ಕೃತಜ್ಞರಾಗುವಿರಿ ಎಂದು.

ثُمَّ عَفَوۡنَا عَنكُم مِّنۢ بَعۡدِ ذَٰلِكَ لَعَلَّكُمۡ
تَشۡكُرُونَ ﴿٥٢﴾

---

53. ನಾವು ಮೂಸಾರಿಗೆ ಗ್ರಂಥವನ್ನು ಹಾಗೂ ಸತ್ಯಾಸತ್ಯ ವಿವೇಚಕವನ್ನು ನೀಡಿದ ಸಂದರ್ಭ. ನೀವು ಸನ್ಮಾರ್ಗ ಪಡೆಯುವುದಕ್ಕಾಗಿ.

وَإِذۡ ءَاتَيۡنَا مُوسَى ٱلۡكِتَٰبَ وَٱلۡفُرۡقَانَ لَعَلَّكُمۡ
تَهۡتَدُونَ ﴿٥٣﴾

---

[1] ಇಸ್ರಾಯೇಲ್ ಮಕ್ಕಳು ಫರೋಹನ ಸೈನ್ಯದಿಂದ ಪಾರಾಗಿ ಸೀನಾ ತಪ್ಪಲಿಗೆ ಬಂದು ನೆಲೆಸಿದರು. ಅಲ್ಲಿ ಅಲ್ಲಾಹನ ವಾಗ್ದಾನದಂತೆ ಮೂಸಾ (ಅವರ ಮೇಲೆ ಶಾಂತಿಯಿರಲಿ) ತೌರಾತ್ (ತೋರ) ಪಡೆಯಲು ನಲ್ವತ್ತು ದಿನ ತೂರ್ ಪರ್ವತಕ್ಕೆ ಹೋಗಿ ನೆಲೆಸಿದರು. ಮೂಸಾರ (ಅವರ ಮೇಲೆ ಶಾಂತಿಯಿರಲಿ) ನಿರ್ಗಮನದ ನಂತರ ಇಸ್ರಾಯೇಲ್ ಮಕ್ಕಳು ಸಾಮಿರಿ ಎಂಬಾತನ ಆದೇಶದಂತೆ ಕರುವಿನ ವಿಗ್ರಹವನ್ನು ಪೂಜಿಸತೊಡಗಿದರು.

54. ಮೂಸಾ ತಮ್ಮ ಜನರೊಡನೆ ಹೇಳಿದ ಸಂದರ್ಭ: “ನನ್ನ ಜನರೇ! ಕರುವನ್ನು ದೇವರಾಗಿ ಮಾಡಿಕೊಳ್ಳುವ ಮೂಲಕ ನಿಶ್ಚಯವಾಗಿಯೂ ನೀವು ನಿಮ್ಮ ಮೇಲೆಯೇ ಅಕ್ರಮವೆಸಗಿ-ದ್ದೀರಿ. ಆದ್ದರಿಂದ, ನೀವು ಪಶ್ಚಾತ್ತಾಪಪಟ್ಟು ನಿಮ್ಮ ಸೃಷ್ಟಿಕರ್ತನ ಕಡೆಗೆ ಮರಳಿರಿ; ನಿಮ್ಮನ್ನು ನೀವೇ ಕೊಲ್ಲಿರಿ.[1] ನಿಮ್ಮ ಸೃಷ್ಟಿಕರ್ತನ ದೃಷ್ಟಿಯಲ್ಲಿ ಅದೇ ನಿಮಗೆ ಶ್ರೇಷ್ಠವಾಗಿದೆ.” ಆಗ ಅಲ್ಲಾಹು ನಿಮ್ಮ ಪಶ್ಚಾತ್ತಾಪವನ್ನು ಸ್ವೀಕರಿಸಿದನು. ನಿಶ್ಚಯವಾಗಿಯೂ ಅವನು ಪಶ್ಚಾತ್ತಾಪ ಸ್ವೀಕರಿಸುವವನು ಮತ್ತು ಕರುಣೆ ತೋರುವವನಾಗಿದ್ದಾನೆ.

وَإِذۡ قَالَ مُوسَىٰ لِقَوۡمِهِۦ يَٰقَوۡمِ إِنَّكُمۡ ظَلَمۡتُمۡ
أَنفُسَكُم بِٱتِّخَاذِكُمُ ٱلۡعِجۡلَ فَتُوبُوٓاْ إِلَىٰ
بَارِئِكُمۡ فَٱقۡتُلُوٓاْ أَنفُسَكُمۡ ذَٰلِكُمۡ خَيۡرٞ
لَّكُمۡ عِندَ بَارِئِكُمۡ فَتَابَ عَلَيۡكُمۡۚ إِنَّهُۥ هُوَ
ٱلتَّوَّابُ ٱلرَّحِيمُ ٥٤

---

55. “ಓ ಮೂಸಾ! ಅಲ್ಲಾಹನನ್ನು ನೇರವಾಗಿ ನೋಡುವ ತನಕ ನಾವು ನಿಮ್ಮಲ್ಲಿ ವಿಶ್ವಾಸವಿಡುವುದೇ ಇಲ್ಲ” ಎಂದು ನೀವು ಹೇಳಿದ ಸಂದರ್ಭ(ವನ್ನು ಸ್ಮರಿಸಿ). ಆಗ ನೀವು ನೋಡುತ್ತಿದ್ದಂತೆಯೇ ಮಿಂಚು ನಿಮ್ಮ ಮೇಲೆರಗಿ ಬಿಟ್ಟಿತು.

وَإِذۡ قُلۡتُمۡ يَٰمُوسَىٰ لَن نُّؤۡمِنَ لَكَ حَتَّىٰ نَرَى
ٱللَّهَ جَهۡرَةٗ فَأَخَذَتۡكُمُ ٱلصَّٰعِقَةُ وَأَنتُمۡ
تَنظُرُونَ ٥٥

---

56. ನಂತರ, ನಿಮ್ಮ ಸಾವಿನ ಬಳಿಕ ನಾವು ನಿಮಗೆ ಜೀವ ನೀಡಿದೆವು. ನೀವು ಕೃತಜ್ಞರಾಗುವುದಕ್ಕಾಗಿ.[2]

ثُمَّ بَعَثۡنَٰكُم مِّنۢ بَعۡدِ مَوۡتِكُمۡ لَعَلَّكُمۡ
تَشۡكُرُونَ ٥٦

---

57. ನಾವು ನಿಮಗೆ ಮೋಡದ ನೆರಳನ್ನು ನೀಡಿದೆವು ಮತ್ತು ಮನ್ನ ಹಾಗೂ ಸಲ್ವಾವನ್ನು ಇಳಿಸಿಕೊಟ್ಟೆವು.[3] (ನಾವು ಹೇಳಿದೆವು): “ನಾವು ನಿಮಗೆ ಒದಗಿಸಿದ ಶುದ್ಧ ವಸ್ತುಗಳಿಂದ ತಿನ್ನಿರಿ.” ಅವರು ನಮಗೆ ಅನ್ಯಾಯ ಮಾಡಲಿಲ್ಲ; ಬದಲಿಗೆ, ಅವರು ಅವರಿಗೇ ಅನ್ಯಾಯ ಮಾಡುತ್ತಿದ್ದರು.

وَظَلَّلۡنَا عَلَيۡكُمُ ٱلۡغَمَامَ وَأَنزَلۡنَا عَلَيۡكُمُ
ٱلۡمَنَّ وَٱلسَّلۡوَىٰۖ كُلُواْ مِن طَيِّبَٰتِ مَا
رَزَقۡنَٰكُمۡۚ وَمَا ظَلَمُونَا وَلَٰكِن كَانُوٓاْ أَنفُسَهُمۡ
يَظۡلِمُونَ ٥٧

---

58. ನಾವು ಹೇಳಿದ ಸಂದರ್ಭ(ವನ್ನು ಸ್ಮರಿಸಿ): “ಈ ಊರನ್ನು

وَإِذۡ قُلۡنَا ٱدۡخُلُواْ هَٰذِهِ ٱلۡقَرۡيَةَ فَكُلُواْ مِنۡهَا

---

[1] ಇಸ್ರಾಯೇಲ್ ಮಕ್ಕಳು ಮಾಡಿದ ಬಹುದೇವಾರಾಧನೆಗಾಗಿ ಮೂಸಾ (ಅವರ ಮೇಲೆ ಶಾಂತಿಯಿರಲಿ) ಅವರಿಗೆ ಛೀಮಾರಿ ಹಾಕಿದಾಗ ಅವರು ವಿಷಾದಿಸಿ ಪಶ್ಚಾತ್ತಾಪಪಡಲು ಮುಂದಾದರು. ಅವರು ಮಾಡಿದ ಪಾಪಕ್ಕೆ ಪರಿಹಾರವು ಅವರನ್ನೇ ಅವರು ಕೊಲ್ಲುವುದಾಗಿತ್ತು. ಇದನ್ನು ಎರಡು ರೀತಿಯಲ್ಲಿ ವಿವರಿಸಲಾಗಿದೆ: ಒಂದು, ಅವರನ್ನು ಎರಡು ಸಾಲುಗಳಾಗಿ ನಿಲ್ಲಿಸಿ ಒಬ್ಬರು ಇನ್ನೊಬ್ಬರನ್ನು ಕೊಲ್ಲಬೇಕೆಂದು ಆದೇಶಿಸಲಾಯಿತು. ಎರಡು, ಅವರಲ್ಲಿ ಈ ಪಾಪ ಮಾಡಿದವರನ್ನು ಪಾಪ ಮಾಡದವರು ಕೊಲ್ಲಬೇಕೆಂದು ಆದೇಶಿಸಲಾಯಿತು.

[2] ಮೂಸಾ (ಅವರ ಮೇಲೆ ಶಾಂತಿಯಿರಲಿ) ತೂರ್ ಪರ್ವತಕ್ಕೆ ಹೋಗುವಾಗ 70 ಮಂದಿಯನ್ನು ಕರೆದೊಯ್ದಿದ್ದರು. ಹಿಂದಿರುಗಿ ಬರುವಾಗ ಅವರು ಹೇಳಿದರು: "ಓ ಮೂಸಾ! ಅಲ್ಲಾಹನನ್ನು ನಮ್ಮ ಕಣ್ಣ ಮುಂದೆ ನೇರವಾಗಿ ನೋಡುವ ತನಕ ನಿಮ್ಮ ಮಾತಿನಲ್ಲಿ ನಾವು ನಂಬಿಕೆಯಿಡುವು-ದಿಲ್ಲ." ಆಗ ಇದ್ದಕ್ಕಿದ್ದಂತೆ ಆಕಾಶದಲ್ಲಿ ಮಿಂಚು ಗೋಚರವಾಗಿ ಅದು ಅವರ ಮೇಲೆ ಬಿದ್ದು ಅವರೆಲ್ಲರೂ ಸತ್ತರು. ಇದರಿಂದ ಮೂಸಾ (ಅವರ ಮೇಲೆ ಶಾಂತಿಯಿರಲಿ) ತುಂಬಾ ದುಃಖಿತರಾದರು. ನಂತರ ಅವರ ಪ್ರಾರ್ಥನೆಗೆ ಉತ್ತರವಾಗಿ ಅಲ್ಲಾಹು ಅವರನ್ನು ಜೀವಂತಗೊಳಿಸಿದನು.

[3] ಮನ್ನ ಎಂದರೆ ಕೆಲವರ ಅಭಿಪ್ರಾಯ ಪ್ರಕಾರ ತರಂಜಬೀನ್ ಎಂಬ ಹೆಸರಿನ ಅಂಟು ತಿನಿಸು. ಇದು ಒಂಟೆಮುಳ್ಳು ಎಂಬ ಸಸ್ಯದ ಎಲೆ ಮತ್ತು ಕಾಂಡಗಳಲ್ಲಿ ಉತ್ಪಾದನೆಯಾಗುವ ರಾಳದಂತಹ ಸಿಹಿವಸ್ತುವಾಗಿದೆ. ಮನ್ನ ಎಂದರೆ ಮರ ಹಾಗೂ ಬಂಡೆಗಳ ಮೇಲೆ ಬೀಳುವ ಇಬ್ಬನಿಯೆಂದು ಕೆಲವರು ಹೇಳಿದ್ದಾರೆ. ಇದು ಜೇನಿನಂತೆ ಸಿಹಿಯಾಗಿರುತ್ತದೆ ಮತ್ತು ಒಣಗಿದಾಗ ಮೇಣದಂತಾಗುತ್ತದೆ. ಕೆಲವರು ಮನ್ನ ಎಂದರೆ ಜೇನು ಅಥವಾ ಸಿಹಿನೀರು ಎಂದಿದ್ದಾರೆ. ಸಲ್ವಾ ಎಂದರೆ ಲಾವಕ್ಕಿ ಅಥವಾ ಗುಬ್ಬಚ್ಚಿಯಂತಹ ಸಣ್ಣ ಹಕ್ಕಿಯಾಗಿದ್ದು ಇದನ್ನು ಕೊಯ್ದು ತಿನ್ನುತ್ತಾರೆ.

ಪ್ರವೇಶಿಸಿರಿ.[1] ಇಲ್ಲಿ ನೀವು ಇಚ್ಛಿಸುವ ಎಲ್ಲಾ ಕಡೆಗಳಿಂದ ಯಥೇಷ್ಟವಾಗಿ ತಿನ್ನಿರಿ. ಸಾಷ್ಟಾಂಗ ಮಾಡುತ್ತಾ[2] ದ್ವಾರವನ್ನು ಪ್ರವೇಶಿಸಿರಿ ಮತ್ತು 'ಹಿತ್ತ'[3] ಎಂದು ಹೇಳಿರಿ. ನಾವು ನಿಮ್ಮ ಪಾಪಗಳನ್ನು ಕ್ಷಮಿಸುವೆವು ಮತ್ತು ಸತ್ಕರ್ಮವೆಸಗುವವರಿಗೆ ಪ್ರತಿಫಲವನ್ನು ಹೆಚ್ಚಿಸುವೆವು."

حَيۡثُ شِئۡتُمۡ رَغَدٗا وَٱدۡخُلُواْ ٱلۡبَابَ سُجَّدٗا وَقُولُواْ حِطَّةٞ نَّغۡفِرۡ لَكُمۡ خَطَٰيَٰكُمۡۚ وَسَنَزِيدُ ٱلۡمُحۡسِنِينَ ﴿٥٨﴾

---

59. ಆದರೆ ಆ ಅಕ್ರಮಿಗಳು ಅವರಿಗೆ ಹೇಳಲಾದ ಮಾತನ್ನು ಬದಲಾಯಿಸಿದರು.[4] ಆದ್ದರಿಂದ, ನಾವು ಆ ಅಕ್ರಮಿಗಳ ಮೇಲೆ—ಅವರು ಮಾಡುತ್ತಿದ್ದ ದುಷ್ಕರ್ಮಗಳ ನಿಮಿತ್ತ—ಆಕಾಶದಿಂದ ಶಿಕ್ಷೆಯನ್ನು ಇಳಿಸಿದೆವು.

فَبَدَّلَ ٱلَّذِينَ ظَلَمُواْ قَوۡلًا غَيۡرَ ٱلَّذِي قِيلَ لَهُمۡ فَأَنزَلۡنَا عَلَى ٱلَّذِينَ ظَلَمُواْ رِجۡزٗا مِّنَ ٱلسَّمَآءِ بِمَا كَانُواْ يَفۡسُقُونَ ﴿٥٩﴾

---

60. ಮೂಸಾ ತಮ್ಮ ಜನರಿಗಾಗಿ ನೀರನ್ನು ಬೇಡಿದ ಸಂದರ್ಭ. ನಾವು ಹೇಳಿದೆವು: "ನಿಮ್ಮ ಕೈಯಲ್ಲಿರುವ ಕೋಲಿನಿಂದ ಆ ಬಂಡೆಯ ಮೇಲೆ ಹೊಡೆಯಿರಿ." ಆಗ ಅದರಿಂದ ಹನ್ನೆರಡು ಚಿಲುಮೆಗಳು ಚಿಮ್ಮಿ ಹರಿದವು.[5] ಎಲ್ಲಾ ಜನರೂ (ಗೋತ್ರಗಳೂ) ತಮ್ಮ ನೀರಿನ ಸ್ಥಳವನ್ನು ತಿಳಿದುಕೊಂಡರು. (ನಾವು ಹೇಳಿದೆವು): "ಅಲ್ಲಾಹು ಒದಗಿಸಿದ ಆಹಾರದಿಂದ ತಿನ್ನಿರಿ ಮತ್ತು ಕುಡಿಯಿರಿ; ಭೂಮಿಯಲ್ಲಿ ಕಿಡಿಗೇಡಿತನ ಮಾಡುತ್ತಾ ಅಲೆಯಬೇಡಿ."

۞وَإِذِ ٱسۡتَسۡقَىٰ مُوسَىٰ لِقَوۡمِهِۦ فَقُلۡنَا ٱضۡرِب بِّعَصَاكَ ٱلۡحَجَرَۖ فَٱنفَجَرَتۡ مِنۡهُ ٱثۡنَتَا عَشۡرَةَ عَيۡنٗاۖ قَدۡ عَلِمَ كُلُّ أُنَاسٖ مَّشۡرَبَهُمۡۖ كُلُواْ وَٱشۡرَبُواْ مِن رِّزۡقِ ٱللَّهِ وَلَا تَعۡثَوۡاْ فِي ٱلۡأَرۡضِ مُفۡسِدِينَ ﴿٦٠﴾

---

61. ನೀವು ಹೇಳಿದ ಸಂದರ್ಭ(ವನ್ನು ಸ್ಮರಿಸಿ): "ಓ ಮೂಸಾ! ಒಂದೇ ರೀತಿಯ ಆಹಾರವನ್ನು ಸಹಿಸಿಕೊಂಡಿರಲು ನಮಗೆ ಸಾಧ್ಯವೇ ಇಲ್ಲ. ಆದ್ದರಿಂದ ನೀವು ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಕರೆದು ಪ್ರಾರ್ಥಿಸಿರಿ. ಅವನು ನಮಗೆ ಭೂಮಿಯಲ್ಲಿ ಬೆಳೆಯುವ ಸೊಪ್ಪು, ಸೌತೆ, ಗೋಧಿ, ಮಸೂರ ಮತ್ತು ಈರುಳ್ಳಿಯನ್ನು ಉತ್ಪಾದಿಸಿಕೊಡಲಿ." ಮೂಸಾ ಹೇಳಿದರು: "ಅತ್ಯುತ್ತಮ ವಸ್ತುವನ್ನು ಬಿಟ್ಟು ಕಳಪೆ ವಸ್ತುವನ್ನು ಏಕೆ ಕೇಳುತ್ತೀರಿ? ನೀವು ಯಾವುದಾದರೂ ನಗರಕ್ಕೆ ಹೋಗಿರಿ. ಅಲ್ಲಿ ನೀವು ಕೇಳಿದ್ದೆಲ್ಲವೂ ನಿಮಗೆ ಸಿಗುವುದು." (ಅವರ ದರ್ಪದಿಂದಾಗಿ) ಅವರ ಮೇಲೆ

وَإِذۡ قُلۡتُمۡ يَٰمُوسَىٰ لَن نَّصۡبِرَ عَلَىٰ طَعَامٖ وَٰحِدٖ فَٱدۡعُ لَنَا رَبَّكَ يُخۡرِجۡ لَنَا مِمَّا تُنۢبِتُ ٱلۡأَرۡضُ مِنۢ بَقۡلِهَا وَقِثَّآئِهَا وَفُومِهَا وَعَدَسِهَا وَبَصَلِهَاۖ قَالَ أَتَسۡتَبۡدِلُونَ ٱلَّذِي هُوَ أَدۡنَىٰ بِٱلَّذِي هُوَ خَيۡرٌۚ ٱهۡبِطُواْ مِصۡرٗا فَإِنَّ لَكُم مَّا سَأَلۡتُمۡۗ وَضُرِبَتۡ عَلَيۡهِمُ ٱلذِّلَّةُ وَٱلۡمَسۡكَنَةُ وَبَآءُو بِغَضَبٖ مِّنَ ٱللَّهِۚ ذَٰلِكَ بِأَنَّهُمۡ كَانُواْ يَكۡفُرُونَ بِـَٔايَٰتِ ٱللَّهِ وَيَقۡتُلُونَ ٱلنَّبِيِّـۧنَ بِغَيۡرِ ٱلۡحَقِّۚ ذَٰلِكَ بِمَا عَصَواْ وَّكَانُواْ يَعۡتَدُونَ ﴿٦١﴾

---

[1] ಹೆಚ್ಚಿನ ವ್ಯಾಖ್ಯಾನಕಾರರ ಅಭಿಪ್ರಾಯ ಪ್ರಕಾರ ಆ ಊರು ಬೈತುಲ್ ಮುಕದ್ದಸ್.

[2] ಸಾಷ್ಟಾಂಗ ಮಾಡುತ್ತಾ ಪ್ರವೇಶಿಸಿರಿ ಎಂದರೆ ತಲೆಬಾಗುತ್ತಾ ಪ್ರವೇಶಿಸಿರಿ ಎಂದು ಕೆಲವರು ಅರ್ಥ ನೀಡಿದ್ದಾರೆ. ಕೆಲವರು ಇದನ್ನು ಅಕ್ಷರಾರ್ಥದಲ್ಲಿ ಗೌರವದ ರೂಪದಲ್ಲಿ ಸಾಷ್ಟಾಂಗ ಮಾಡುತ್ತಾ ಪ್ರವೇಶಿಸಿರಿ ಎಂದು ಅರ್ಥ ನೀಡಿದ್ದಾರೆ.

[3] ಹಿತ್ತ ಎಂದರೆ ನಮ್ಮ ಪಾಪಗಳನ್ನು ಮನ್ನಿಸು ಎಂದರ್ಥ.

[4] ಅವರು ಸಾಷ್ಟಾಂಗ ಮಾಡುತ್ತಾ ಪ್ರವೇಶಿಸುವುದಕ್ಕೆ ಬದಲು, ಬಟ್ಟೆಯನ್ನು ನೆಲದಲ್ಲಿ ಎಳೆಯುತ್ತಾ ಎದೆಯುಬ್ಬಿಸಿ ಅಹಂಕಾರದಿಂದ ಪ್ರವೇಶಿಸಿದರು. ಹಿತ್ತ ಎಂದು ಹೇಳುವುದರ ಬದಲಿಗೆ ಬೇರೊಂದು ಮಾತನ್ನು ಹೇಳಿದರು. ಇದರಿಂದ ಅವರ ಅಹಂಕಾರ ಮತ್ತು ದೈವಿಕ ಆಜ್ಞೆಗೆ ಅವರು ತೋರುತ್ತಿದ್ದ ತಿರಸ್ಕಾರವನ್ನು ಅರ್ಥೈಸಬಹುದು.

[5] ಇಸ್ರಾಯೇಲ್ ಮಕ್ಕಳ ಹನ್ನೆರಡು ಗೋತ್ರಗಳಿಗೆ ಹನ್ನೆರಡು ಚಿಲುಮೆಗಳು.

ಅಪಮಾನ ಹಾಗೂ ಬಡತನವನ್ನು ಹೊದಿಸಲಾಯಿತು; ಅವರು ಅಲ್ಲಾಹನ ಕೋಪದೊಂದಿಗೆ ಮರಳಿದರು. ಅದೇಕೆಂದರೆ, ಅವರು ಅಲ್ಲಾಹನ ವಚನಗಳನ್ನು ನಿಷೇಧಿಸುತ್ತಿದ್ದರು ಮತ್ತು ಪ್ರವಾದಿಗಳನ್ನು ಅನ್ಯಾಯವಾಗಿ ಕೊಲ್ಲುತ್ತಿದ್ದರು. ಅದು ಅವರ ಅವಿಧೇಯತೆ ಮತ್ತು ಅತಿರೇಕದ ಫಲಿತಾಂಶವಾಗಿತ್ತು.

---

62. ನಿಶ್ಚಯವಾಗಿಯೂ ಸತ್ಯವಿಶ್ವಾಸಿಗಳು, ಯಹೂದಿಗಳು, ಕ್ರೈಸ್ತರು ಅಥವಾ ಸಾಬಿಗಳು—ಇವರ ಪೈಕಿ ಅಲ್ಲಾಹನಲ್ಲಿ ಮತ್ತು ಅಂತ್ಯದಿನದಲ್ಲಿ ವಿಶ್ವಾಸವಿಟ್ಟವರು ಹಾಗೂ ಸತ್ಕರ್ಮವೆಸಗಿದವರು ಯಾರೋ, ಅವರಿಗೆ ಅವರ ಪ್ರತಿಫಲವು ಅವರ ಪರಿಪಾಲಕನ (ಅಲ್ಲಾಹನ) ಬಳಿಯಿದೆ. ಅವರಿಗೆ ಯಾವುದೇ ಭಯವಿಲ್ಲ; ಅವರು ದುಃಖಿಸುವುದೂ ಇಲ್ಲ.[1]

إِنَّ ٱلَّذِينَ ءَامَنُواْ وَٱلَّذِينَ هَادُواْ وَٱلنَّصَٰرَىٰ وَٱلصَّٰبِـِٔينَ مَنْ ءَامَنَ بِٱللَّهِ وَٱلْيَوْمِ ٱلْـَٔاخِرِ وَعَمِلَ صَٰلِحًا فَلَهُمْ أَجْرُهُمْ عِندَ رَبِّهِمْ وَلَا خَوْفٌ عَلَيْهِمْ وَلَا هُمْ يَحْزَنُونَ ٦٢

---

63. ನಾವು ನಿಮ್ಮಿಂದ ಕರಾರನ್ನು ಪಡೆದುಕೊಂಡ ಮತ್ತು ನಿಮ್ಮ ಮೇಲೆ ತೂರ್ ಪರ್ವತವನ್ನು ಎತ್ತಿಹಿಡಿದ ಸಂದರ್ಭ. (ನಾವು ಹೇಳಿದೆವು): "ನಾವು ನಿಮಗೆ ನೀಡಿದ್ದನ್ನು ಬಿಗಿಯಾಗಿ ಹಿಡಿಯಿರಿ ಮತ್ತು ಅದರಲ್ಲಿರುವುದನ್ನು ನೆನಪಿಟ್ಟುಕೊಳ್ಳಿರಿ; ನೀವು ದೇವಭಯವುಳ್ಳವರಾಗುವುದಕ್ಕಾಗಿ."

وَإِذْ أَخَذْنَا مِيثَٰقَكُمْ وَرَفَعْنَا فَوْقَكُمُ ٱلطُّورَ خُذُواْ مَآ ءَاتَيْنَٰكُم بِقُوَّةٍ وَٱذْكُرُواْ مَا فِيهِ لَعَلَّكُمْ تَتَّقُونَ ٦٣

---

64. ನಂತರ, ಅದರ ಬಳಿಕವೂ ನೀವು ವಿಮುಖರಾದಿರಿ. ನಿಮ್ಮ ಮೇಲೆ ಅಲ್ಲಾಹನ ಔದಾರ್ಯ ಮತ್ತು ದಯೆಯಿಲ್ಲದಿರುತ್ತಿದ್ದರೆ, ನೀವು ನಷ್ಟ ಹೊಂದಿದವರಲ್ಲಿ ಸೇರುತ್ತಿದ್ದಿರಿ.

ثُمَّ تَوَلَّيْتُم مِّنۢ بَعْدِ ذَٰلِكَ ۖ فَلَوْلَا فَضْلُ ٱللَّهِ عَلَيْكُمْ وَرَحْمَتُهُۥ لَكُنتُم مِّنَ ٱلْخَٰسِرِينَ ٦٤

---

65. ನಿಮ್ಮ ಪೈಕಿ ಸಬ್ಬತ್‌ನ[2] ವಿಷಯದಲ್ಲಿ ಅತಿರೇಕವೆಸಗಿದವರ ಬಗ್ಗೆ ನಿಮಗೆ ಈಗಾಗಲೇ ತಿಳಿದಿದೆ. ನಾವು ಅವರೊಡನೆ ಹೇಳಿದೆವು:

وَلَقَدْ عَلِمْتُمُ ٱلَّذِينَ ٱعْتَدَوْاْ مِنكُمْ فِى ٱلسَّبْتِ فَقُلْنَا لَهُمْ كُونُواْ قِرَدَةً خَٰسِـِٔينَ ٦٥

---

[1] ಕೆಲವರು ಈ ವಚನವನ್ನು ತಪ್ಪಾಗಿ ಅರ್ಥಮಾಡಿಕೊಂಡು 'ಧರ್ಮಗಳ ಏಕತೆ' ಎಂಬ ಹೊಸ ಸಿದ್ಧಾಂತವನ್ನು ಸ್ಥಾಪಿಸಿದ್ದಾರೆ. ಅವರ ಪ್ರಕಾರ ಇಸ್ಲಾಂ ಧರ್ಮದಲ್ಲಿ ವಿಶ್ವಾಸವಿಡುವುದು ಕಡ್ಡಾಯವಲ್ಲ. ಯಾವುದೇ ಧರ್ಮದಲ್ಲಿದ್ದು ಏಕದೇವನನ್ನು ಆರಾಧಿಸಿ ಒಳಿತು ಮಾಡಿದರೆ ಅವರಿಗೆ ಮೋಕ್ಷ ಸಿಗುತ್ತದೆ. ಇದು ಅತ್ಯಂತ ಹೊಲಸು ಸಿದ್ಧಾಂತವಾಗಿದ್ದು ಕುರ್‌ಆನಿನ ಬೋಧನೆಗಳಿಗೆ ವಿರುದ್ಧವಾಗಿದೆ. ಈ ವಚನದ ನಿಜವಾದ ಅರ್ಥವೇನೆಂದರೆ, ಮೇಲಿನ ವಚನಗಳಲ್ಲಿ ಯಹೂದಿಗಳ ಅವಿಧೇಯತೆ, ಅಹಂಕಾರ ಮತ್ತು ಅತಿರೇಕಗಳ ಬಗ್ಗೆ ಪ್ರಸ್ತಾಪಿಸಿ, ಅವರಿಗೆ ನೀಡಲಾದ ಶಿಕ್ಷೆಯ ಬಗ್ಗೆಯೂ ಪ್ರಸ್ತಾಪಿಸಲಾದಾಗ, ಸ್ವಾಭಾವಿಕವಾಗಿ ಒಂದು ಪ್ರಶ್ನೆ ಉದ್ಭವವಾಗುತ್ತದೆ. ಹಾಗಾದರೆ, ಯಹೂದಿಗಳಲ್ಲಿ ಒಳ್ಳೆಯವರು ಯಾರೂ ಇರಲಿಲ್ಲವೇ? ಇದ್ದರೆ ಅವರಿಗೆ ಅಲ್ಲಾಹು ಏನು ಪ್ರತಿಫಲ ನೀಡಿದ್ದಾನೆ? ಇದಕ್ಕೆ ಉತ್ತರವಾಗಿ, ಈ ವಚನ ಅವತೀರ್ಣವಾಗಿದೆ. ಅಂದರೆ, ಯಹೂದಿಗಳಲ್ಲಿ ಮಾತ್ರವಲ್ಲ, ಕ್ರೈಸ್ತರು, ಸಾಬಿಗಳು ಮುಂತಾದವರಲ್ಲಿಯೂ ಪ್ರವಾದಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರವರ ಆಗಮನಕ್ಕೆ ಮುಂಚೆ ಅಲ್ಲಾಹನಲ್ಲಿ ಮತ್ತು ಪರಲೋಕದಲ್ಲಿ ವಿಶ್ವಾಸವಿಟ್ಟು, ಸತ್ಕಾರ್ಯಗಳನ್ನು ಮಾಡಿದ್ದರೆ ಅವರೆಲ್ಲರೂ ಮೋಕ್ಷ ಪಡೆಯುತ್ತಾರೆ. ಅದೇ ರೀತಿ, ಈಗ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರವರ ಸಂದೇಶದಲ್ಲಿ ವಿಶ್ವಾಸವಿಡುವವರು ಕೂಡ ಅಲ್ಲಾಹನಲ್ಲಿ ಮತ್ತು ಪರಲೋಕದಲ್ಲಿ ಸರಿಯಾಗಿ ವಿಶ್ವಾಸವಿಟ್ಟು ಸತ್ಕಾರ್ಯಗಳನ್ನು ಮಾಡಿದರೆ ಅವರು ಕೂಡ ಮೋಕ್ಷ ಪಡೆಯುತ್ತಾರೆ.

[2] ಸಬ್ಬತ್ ಎಂದರೆ ಶನಿವಾರ. ಅಂದು ಯಹೂದಿಗಳಿಗೆ ಮೀನು ಹಿಡಿಯುವುದು ಹಾಗೂ ಇತರ ಎಲ್ಲಾ ಲೌಕಿಕ ಕೆಲಸ ಮಾಡುವುದನ್ನು ನಿಷೇಧಿಸಲಾಗಿತ್ತು. ಅವರಿಗೆ ಒಂದು ಪರೀಕ್ಷೆಯೋ ಎಂಬಂತೆ ಶನಿವಾರ ಮೀನುಗಳು ಹೆಚ್ಚು ಹೆಚ್ಚಾಗಿ ಕಾಣುತ್ತಿದ್ದವು. ಆದ್ದರಿಂದ, ಅವರು ಶನಿವಾರ ಬಲೆ ಹಾಕಿ ಭಾನುವಾರ ಮೀನು ಹಿಡಿಯುವ ಉಪಾಯ ಮಾಡಿದರು. ಇದು ದೈವಿಕ ಆಜ್ಞೆಯ ಸ್ಪಷ್ಟ ಉಲ್ಲಂಘನೆಯಾಗಿತ್ತು.

"ನೀವು ಹೊಲಸು ಕಪಿಗಳಾಗಿ ಬಿಡಿ."

66. ನಾವು ಅದನ್ನು ಆ ಕಾಲದವರಿಗೂ, ಅದರ ನಂತರದವರಿಗೂ ಒಂದು ನೀತಿಪಾಠ ಮತ್ತು ದೇವಭಯವುಳ್ಳವರಿಗೆ ಉಪದೇಶವೆಂಬಂತೆ ಮಾಡಿದೆವು.

فَجَعَلۡنَٰهَا نَكَٰلٗا لِّمَا بَيۡنَ يَدَيۡهَا وَمَا خَلۡفَهَا وَمَوۡعِظَةٗ لِّلۡمُتَّقِينَ ٦٦

67. ಮೂಸಾ ತಮ್ಮ ಜನರೊಡನೆ ಹೇಳಿದ ಸಂದರ್ಭ: "ಅಲ್ಲಾಹು ನಿಮ್ಮೊಡನೆ ಒಂದು ಹಸುವನ್ನು ಕೊಯ್ಯಲು ಆದೇಶಿಸುತ್ತಿದ್ದಾನೆ."[1] ಅವರು ಕೇಳಿದರು: "ಏನು ನೀವು ನಮ್ಮನ್ನು ಅಣಕಿಸುತ್ತಿದ್ದೀರಾ?" ಮೂಸಾ ಹೇಳಿದರು: "ಅವಿವೇಕಿಗಳಲ್ಲಿ ಸೇರದಂತೆ ನಾನು ಅಲ್ಲಾಹನಲ್ಲಿ ಅಭಯ ಕೋರುತ್ತೇನೆ."

وَإِذۡ قَالَ مُوسَىٰ لِقَوۡمِهِۦٓ إِنَّ ٱللَّهَ يَأۡمُرُكُمۡ أَن تَذۡبَحُواْ بَقَرَةٗۖ قَالُوٓاْ أَتَتَّخِذُنَا هُزُوٗاۖ قَالَ أَعُوذُ بِٱللَّهِ أَنۡ أَكُونَ مِنَ ٱلۡجَٰهِلِينَ ٦٧

68. ಅವರು ಹೇಳಿದರು:"ನೀವು ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಕರೆದು ಪ್ರಾರ್ಥಿಸಿರಿ; ಅದು (ಹಸು) ಯಾವುದೆಂದು ಅವನು ನಮಗೆ ವಿವರಿಸಿಕೊಡಲಿ." ಮೂಸಾ ಹೇಳಿದರು: "ಅದು ಮುದಿ ಪ್ರಾಯದ್ದೋ ಅಥವಾ ಎಳೆಯ ಪ್ರಾಯದ್ದೋ ಅಲ್ಲದ ಅದರ ನಡುವಿನ ಪ್ರಾಯದ ಹಸುವಾಗಿದೆಯೆಂದು ಅವನು ಹೇಳುತ್ತಿದ್ದಾನೆ. ಆದ್ದರಿಂದ ನಿಮಗೆ ಆದೇಶಿಸಲಾಗುವಂತೆ ಕಾರ್ಯೋನ್ಮುಖರಾಗಿರಿ."

قَالُواْ ٱدۡعُ لَنَا رَبَّكَ يُبَيِّن لَّنَا مَا هِيَۚ قَالَ إِنَّهُۥ يَقُولُ إِنَّهَا بَقَرَةٞ لَّا فَارِضٞ وَلَا بِكۡرٌ عَوَانُۢ بَيۡنَ ذَٰلِكَۖ فَٱفۡعَلُواْ مَا تُؤۡمَرُونَ ٦٨

69. ಅವರು ಹೇಳಿದರು: "ನೀವು ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಕರೆದು ಪ್ರಾರ್ಥಿಸಿರಿ; ಅದರ ಬಣ್ಣ ಯಾವುದೆಂದು ಅವನು ನಮಗೆ ವಿವರಿಸಿಕೊಡಲಿ." ಮೂಸಾ ಹೇಳಿದರು: "ಅದು ಶುಭ್ರ ಹಳದಿ ಬಣ್ಣದ ಹಸುವಾಗಿದ್ದು ನೋಡುಗರನ್ನು ಮುದಗೊಳಿಸುತ್ತದೆ ಎಂದು ಅವನು (ಅಲ್ಲಾಹು) ಹೇಳುತ್ತಿದ್ದಾನೆ."

قَالُواْ ٱدۡعُ لَنَا رَبَّكَ يُبَيِّن لَّنَا مَا لَوۡنُهَاۚ قَالَ إِنَّهُۥ يَقُولُ إِنَّهَا بَقَرَةٞ صَفۡرَآءُ فَاقِعٞ لَّوۡنُهَا تَسُرُّ ٱلنَّٰظِرِينَ ٦٩

70. ಅವರು ಹೇಳಿದರು: "ನೀವು ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಕರೆದು ಪ್ರಾರ್ಥಿಸಿರಿ; ಅದು (ಹಸು) ಯಾವುದೆಂದು ಅವನು ನಮಗೆ ವಿವರಿಸಿಕೊಡಲಿ. ನಿಶ್ಚಯವಾಗಿಯೂ ಹಸುಗಳು ನಮಗೆ ಒಂದೇ ರೀತಿಯಾಗಿ ಕಾಣುತ್ತಿವೆ.[2] ಅಲ್ಲಾಹು ಇಚ್ಛಿಸಿದರೆ ಖಂಡಿವಾಗಿಯೂ ನಾವು

قَالُواْ ٱدۡعُ لَنَا رَبَّكَ يُبَيِّن لَّنَا مَا هِيَ إِنَّ ٱلۡبَقَرَ تَشَٰبَهَ عَلَيۡنَا وَإِنَّآ إِن شَآءَ ٱللَّهُ لَمُهۡتَدُونَ ٧٠

---

[1] ಇಸ್ರಾಯೇಲರಲ್ಲಿ ಒಬ್ಬ ಮಕ್ಕಳಿಲ್ಲದ ಶ್ರೀಮಂತ ವ್ಯಕ್ತಿಯಿದ್ದ. ಅವನ ಸೋದರಳಿಯ ಮಾತ್ರ ಅವನ ವಾರೀಸುದಾರನಾಗಿದ್ದ. ಒಂದು ರಾತ್ರಿ ಸೋದರಳಿಯ ಚಿಕ್ಕಪ್ಪನನ್ನು ಕೊಂದು ಶವವನ್ನು ಬೇರೊಬ್ಬ ವ್ಯಕ್ತಿಯ ಮನೆಯ ಬಾಗಿಲ ಬಳಿ ಹಾಕಿದ. ಬೆಳಗಾದಾಗ, ಕೊಲೆಗಾರನ ಹುಡುಕಾಟದಲ್ಲಿ ಇಸ್ರಾಯೇಲರು ಪರಸ್ಪರ ಜಗಳ ಮಾಡತೊಡಗಿದರು. ಅಂತಿಮವಾಗಿ, ವಿಷಯವು ಮೂಸಾರ (ಅವರ ಮೇಲೆ ಶಾಂತಿಯಿರಲಿ) ಬಳಿ ತಲುಪಿತು. ಆಗ ಅವರು, "ಒಂದು ಹಸುವನ್ನು ಕೊಯ್ದು ಅದರ ಒಂದು ಅಂಗದಿಂದ ಸತ್ತ ವ್ಯಕ್ತಿಗೆ ಬಡಿಯಿರಿ; ಆಗ ಆತ ಜೀವಂತ ಎದ್ದು ಕೊಲೆಗಾರ ಯಾರೆಂದು ಹೇಳುತ್ತಾನೆ" ಎಂದರು. ಮೂಸಾರ ಮಾತು ಕೇಳಿದಾಗ ಅವರೆಲ್ಲರೂ ಗೊಳ್ಳೆಂದು ನಕ್ಕರು.

[2] ನೀವು ವಿವರಿಸಿದ ಗುಣಗಳಿರುವ ಹಲವಾರು ಹಸುಗಳಿವೆ. ನಾವು ಯಾವುದನ್ನು ಕೊಯ್ಯಬೇಕು? ಒಂದು ನಿರ್ದಿಷ್ಟ ಹಸುವಿನ ಬಗ್ಗೆ ನಮಗೆ ವಿವರಿಸಿಕೊಡಿ.

ಸನ್ಮಾರ್ಗವನ್ನು ಪಡೆಯುವೆವು."

---

71. ಮೂಸಾ ಹೇಳಿದರು: "ಅದು ಎಂತಹ ಹಸುವೆಂದರೆ, ಭೂಮಿಯನ್ನು ಉಳಲು ಅಥವಾ ನೀರನ್ನು ಹಾಯಿಸಲು ಅದನ್ನು ಪಳಗಿಸಲಾಗಿಲ್ಲ; ಅದಕ್ಕೆ ಯಾವುದೇ ನ್ಯೂನತೆಗಳಿಲ್ಲ; ಅದರಲ್ಲಿ ಯಾವುದೇ ಕಲೆಗಳೂ ಇಲ್ಲ ಎಂದು ಅಲ್ಲಾಹು ಹೇಳುತ್ತಿದ್ದಾನೆ." ಅವರು ಹೇಳಿದರು: "ಈಗ ನೀವು ಸತ್ಯವನ್ನು ತಂದಿದ್ದೀರಿ." ಹೀಗೆ ಅವರು ಅದನ್ನು ಕೊಯ್ದರು. ಆದರೆ ಅದನ್ನು ಮಾಡುವುದು ಅವರಿಗೆ ಅಷ್ಟು ಸುಲಭವಾಗಿರಲಿಲ್ಲ.[1]

قَالَ إِنَّهُۥ يَقُولُ إِنَّهَا بَقَرَةٞ لَّا ذَلُولٞ تُثِيرُ ٱلۡأَرۡضَ
وَلَا تَسۡقِي ٱلۡحَرۡثَ مُسَلَّمَةٞ لَّا شِيَةَ فِيهَاۚ
قَالُواْ ٱلۡـَٰٔنَ جِئۡتَ بِٱلۡحَقِّۚ فَذَبَحُوهَا وَمَا كَادُواْ
يَفۡعَلُونَ ٧١

---

72. ನೀವು ಒಬ್ಬ ವ್ಯಕ್ತಿಯನ್ನು ಕೊಂದು, ನಂತರ ಪರಸ್ಪರ ದೋಷಾರೋಪ ಹೊರಿಸಿದ ಸಂದರ್ಭ. ನೀವು ಬಚ್ಚಿಡುವುದನ್ನು ಅಲ್ಲಾಹು ಹೊರಗೆ ತರುತ್ತಾನೆ.

وَإِذۡ قَتَلۡتُمۡ نَفۡسٗا فَٱدَّٰرَٰٔتُمۡ فِيهَاۖ وَٱللَّهُ مُخۡرِجٞ مَّا
كُنتُمۡ تَكۡتُمُونَ ٧٢

---

73. ನಾವು ಹೇಳಿದೆವು: "ಅದರ (ಹಸುವಿನ) ಒಂದು ಭಾಗದಿಂದ ಅವನಿಗೆ (ಅವನ ಕಳೇಬರಕ್ಕೆ) ಹೊಡೆಯಿರಿ. (ಆಗ ಅವನು ಜೀವಂತ ಎದ್ದು ನಿಲ್ಲುವನು)." ಈ ರೀತಿ ಅಲ್ಲಾಹು ಸತ್ತವರಿಗೆ ಜೀವ ನೀಡುತ್ತಾನೆ. ನೀವು ಆಲೋಚಿಸುವುದಕ್ಕಾಗಿ ಅವನು ಅವನ ದೃಷ್ಟಾಂತಗಳನ್ನು ನಿಮಗೆ ತೋರಿಸುತ್ತಾನೆ.

فَقُلۡنَا ٱضۡرِبُوهُ بِبَعۡضِهَاۚ كَذَٰلِكَ يُحۡيِ
ٱللَّهُ ٱلۡمَوۡتَىٰ وَيُرِيكُمۡ ءَايَٰتِهِۦ لَعَلَّكُمۡ
تَعۡقِلُونَ ٧٣

---

74. ನಂತರ, ಅದರ ಬಳಿಕವೂ ನಿಮ್ಮ ಹೃದಯಗಳು ಕಠೋರವಾದವು. ಅವು ಬಂಡೆಯಂತೆ ಅಥವಾ ಅದಕ್ಕಿಂತಲೂ ಹೆಚ್ಚು ಕಠೋರವಾದವು. ನಿಶ್ಚಯವಾಗಿಯೂ, ಕೆಲವು ಬಂಡೆಗಳಿಂದ ನದಿಗಳು ಚಿಮ್ಮಿ ಹರಿಯುತ್ತವೆ; ಕೆಲವು ಬಂಡೆಗಳು ಒಡೆದು ನೀರು ಹೊರಬರುತ್ತದೆ; ಕೆಲವು ಬಂಡೆಗಳು ಅಲ್ಲಾಹನ ಭಯದಿಂದ ಉರುಳಿ ಬೀಳುತ್ತವೆ. ನೀವು ಮಾಡುತ್ತಿರುವ ಕರ್ಮಗಳ ಕುರಿತು ಅಲ್ಲಾಹು ತಿಳಿಯದವನಲ್ಲ.

ثُمَّ قَسَتۡ قُلُوبُكُم مِّنۢ بَعۡدِ ذَٰلِكَ فَهِيَ
كَٱلۡحِجَارَةِ أَوۡ أَشَدُّ قَسۡوَةٗۚ وَإِنَّ مِنَ ٱلۡحِجَارَةِ
لَمَا يَتَفَجَّرُ مِنۡهُ ٱلۡأَنۡهَٰرُۚ وَإِنَّ مِنۡهَا لَمَا يَشَّقَّقُ
فَيَخۡرُجُ مِنۡهُ ٱلۡمَآءُۚ وَإِنَّ مِنۡهَا لَمَا يَهۡبِطُ مِنۡ
خَشۡيَةِ ٱللَّهِۗ وَمَا ٱللَّهُ بِغَٰفِلٍ عَمَّا تَعۡمَلُونَ ٧٤

---

75. (ಸತ್ಯವಿಶ್ವಾಸಿಗಳೇ!), ಅವರು ವಿಶ್ವಾಸವಿಡುವರೆಂದು ನೀವು ಹಾರೈಸುತ್ತೀರಾ? ವಾಸ್ತವದಲ್ಲಿ, ಅವರಲ್ಲೊಂದು ಗುಂಪು ಅಲ್ಲಾಹನ ವಚನಗಳಿಗೆ ಕಿವಿಗೊಡುತ್ತಾರೆ; ನಂತರ, ಅದನ್ನು ಸರಿಯಾಗಿ ಅರ್ಥಮಾಡಿಕೊಂಡ ಬಳಿಕ, ತಿಳುವಳಿಕೆಯುಳ್ಳವರಾ-ಗಿದ್ದೂ ಸಹ ಅವರು ಅದನ್ನು ವಿರೂಪಗೊಳಿಸುತ್ತಾರೆ.

أَفَتَطۡمَعُونَ أَن يُؤۡمِنُواْ لَكُمۡ وَقَدۡ كَانَ فَرِيقٞ
مِّنۡهُمۡ يَسۡمَعُونَ كَلَٰمَ ٱللَّهِ ثُمَّ يُحَرِّفُونَهُۥ مِنۢ
بَعۡدِ مَا عَقَلُوهُ وَهُمۡ يَعۡلَمُونَ ٧٥

---

[1] ಮೂಸಾ (ಅವರ ಮೇಲೆ ಶಾಂತಿಯಿರಲಿ) ಒಂದು ಹಸುವನ್ನು ಕೊಯ್ಯಲು ಹೇಳಿದ್ದರು. ನಿರ್ದಿಷ್ಟವಾಗಿ ಯಾವುದು ಎಂದು ಹೇಳಿರಲಿಲ್ಲ. ಆದ್ದರಿಂದ ಯಾವುದೇ ಒಂದು ಹಸುವನ್ನು ಕೊಯ್ದರೆ ಸಾಕಾಗುತ್ತಿತ್ತು. ಆದರೆ ಅವರು ವಿನಾಕಾರಣ ಪ್ರಶ್ನೆಗಳ ಮೇಲೆ ಪ್ರಶ್ನೆಗಳನ್ನು ಕೇಳಿ ವಿಷಯವನ್ನು ಜಟಿಲಗೊಳಿಸಿದರು. ಕೊನೆಗೆ ಮೂಸಾ (ಅವರ ಮೇಲೆ ಶಾಂತಿಯಿರಲಿ) ಹೇಳಿದಂತಹ ಒಂದು ಹಸುವನ್ನು ಹುಡುಕಿ ತರುವುದು ಅವರಿಗೆ ಬಹಳ ಕಷ್ಟವಾಯಿತು.

76. ಸತ್ಯವಿಶ್ವಾಸಿಗಳನ್ನು ಭೇಟಿ ಮಾಡಿದರೆ ಅವರು ಹೇಳುತ್ತಾರೆ: "ನಾವು ವಿಶ್ವಾಸವಿಟ್ಟಿದ್ದೇವೆ." ಆದರೆ ಅವರು ಪರಸ್ಪರ ಏಕಾಂತದಲ್ಲಿರುವಾಗ ಹೇಳುತ್ತಾರೆ: "ಅಲ್ಲಾಹು ನಿಮಗೆ ತಿಳಿಸಿಕೊಟ್ಟ ವಿಷಯಗಳನ್ನು ನೀವೇಕೆ ಅವರಿಗೆ ತಿಳಿಸುತ್ತೀರಿ? ಅವರು ಅದನ್ನು ಹಿಡಿದು ನಿಮ್ಮ ಪರಿಪಾಲಕನ (ಅಲ್ಲಾಹನ) ಮುಂದೆ ನಿಮ್ಮೊಡನೆ ತರ್ಕಿಸುವುದಕ್ಕೋ? ನೀವು ಆಲೋಚಿಸುವುದಿಲ್ಲವೇ?"

وَإِذَا لَقُوا۟ ٱلَّذِينَ ءَامَنُوا۟ قَالُوٓا۟ ءَامَنَّا وَإِذَا خَلَا بَعْضُهُمْ إِلَىٰ بَعْضٍ قَالُوٓا۟ أَتُحَدِّثُونَهُم بِمَا فَتَحَ ٱللَّهُ عَلَيْكُمْ لِيُحَآجُّوكُم بِهِۦ عِندَ رَبِّكُمْ ۚ أَفَلَا تَعْقِلُونَ ٧٦

77. ಆದರೆ ಅವರು ಮುಚ್ಚಿಡುವುದನ್ನು ಮತ್ತು ಬಹಿರಂಗಪಡಿಸುವುದನ್ನು ಅಲ್ಲಾಹು ತಿಳಿಯುತ್ತಾನೆಂದು ಅವರಿಗೆ ತಿಳಿದಿಲ್ಲವೇ?

أَوَلَا يَعْلَمُونَ أَنَّ ٱللَّهَ يَعْلَمُ مَا يُسِرُّونَ وَمَا يُعْلِنُونَ ٧٧

78. ಅವರಲ್ಲಿ ಕೆಲವು ಅನಕ್ಷರಸ್ಥರಿದ್ದಾರೆ; ಅವರಿಗೆ ಗ್ರಂಥದಲ್ಲಿ ಏನಿದೆಯೆಂದೇ ತಿಳಿದಿಲ್ಲ. ಅವರು ಕೆಲವು ಗುಮಾನಿಗಳನ್ನಷ್ಟೇ ಹೊಂದಿದ್ದಾರೆ. ಅವರು ಕೇವಲ ಊಹಿಸುವುದನ್ನಷ್ಟೇ ಮಾಡುತ್ತಾರೆ.

وَمِنْهُمْ أُمِّيُّونَ لَا يَعْلَمُونَ ٱلْكِتَٰبَ إِلَّآ أَمَانِىَّ وَإِنْ هُمْ إِلَّا يَظُنُّونَ ٧٨

79. ಆದ್ದರಿಂದ, ತಮ್ಮ ಕೈಗಳಿಂದ ಗ್ರಂಥವನ್ನು ಬರೆದು, ನಂತರ ಅದರ ಮೂಲಕ ತುಚ್ಛ ಬೆಲೆಯನ್ನು ಪಡೆಯಲು "ಇದು ಅಲ್ಲಾಹನಿಂದ ಬಂದಿದೆ" ಎಂದು ಹೇಳುವವರಿಗೆ ವಿನಾಶ ಕಾದಿದೆ. ಅವರ ಕೈಗಳು ಬರೆದಿರುವುದಕ್ಕೆ ಅವರಿಗೆ ವಿನಾಶವಿದೆ; ಅವರು ಸಂಪಾದಿಸಿರುವುದಕ್ಕೂ ಅವರಿಗೆ ವಿನಾಶವಿದೆ.

فَوَيْلٌ لِّلَّذِينَ يَكْتُبُونَ ٱلْكِتَٰبَ بِأَيْدِيهِمْ ثُمَّ يَقُولُونَ هَٰذَا مِنْ عِندِ ٱللَّهِ لِيَشْتَرُوا۟ بِهِۦ ثَمَنًا قَلِيلًا ۖ فَوَيْلٌ لَّهُم مِّمَّا كَتَبَتْ أَيْدِيهِمْ وَوَيْلٌ لَّهُم مِّمَّا يَكْسِبُونَ ٧٩

80. ಅವರು ಹೇಳಿದರು: "ಬೆರಳೆಣಿಕೆಯ ಕೆಲವು ದಿನಗಳು ಮಾತ್ರ ನರಕಾಗ್ನಿಯು ನಮ್ಮನ್ನು ಸ್ಪರ್ಶಿಸುತ್ತದೆ."[1] ಹೇಳಿರಿ: "ನೀವೇನಾದರೂ ಅಲ್ಲಾಹನಿಂದ ಕರಾರು ಪಡೆದಿದ್ದೀರಾ? ಹಾಗಿದ್ದರೆ ಅಲ್ಲಾಹು ಅವನ ಕರಾರನ್ನು ಎಂದಿಗೂ ಉಲ್ಲಂಘಿಸುವುದಿಲ್ಲ. ಅಥವಾ ನೀವು ಅಲ್ಲಾಹನ ಬಗ್ಗೆ ನಿಮಗೆ ಗೊತ್ತಿಲ್ಲದ್ದನ್ನು ಹೇಳುತ್ತಿದ್ದೀರಾ?"

وَقَالُوا۟ لَن تَمَسَّنَا ٱلنَّارُ إِلَّآ أَيَّامًا مَّعْدُودَةً ۚ قُلْ أَتَّخَذْتُمْ عِندَ ٱللَّهِ عَهْدًا فَلَن يُخْلِفَ ٱللَّهُ عَهْدَهُۥٓ ۖ أَمْ تَقُولُونَ عَلَى ٱللَّهِ مَا لَا تَعْلَمُونَ ٨٠

81. ಹೌದು! ಯಾರು ಕೆಡುಕು ಮಾಡುತ್ತಾನೋ ಮತ್ತು ಯಾರನ್ನು ಅವನ ಪಾಪವು ಸುತ್ತುವರಿದಿದೆಯೋ—ಅವರೇ ನರಕವಾಸಿಗಳು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು.

بَلَىٰ مَن كَسَبَ سَيِّئَةً وَأَحَٰطَتْ بِهِۦ خَطِيٓـَٔتُهُۥ فَأُو۟لَٰٓئِكَ أَصْحَٰبُ ٱلنَّارِ ۖ هُمْ فِيهَا خَٰلِدُونَ ٨١

82. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ—ಅವರೇ ಸ್ವರ್ಗವಾಸಿಗಳು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು.

وَٱلَّذِينَ ءَامَنُوا۟ وَعَمِلُوا۟ ٱلصَّٰلِحَٰتِ أُو۟لَٰٓئِكَ أَصْحَٰبُ ٱلْجَنَّةِ ۖ هُمْ فِيهَا خَٰلِدُونَ ٨٢

[1] ಅಂದರೆ ನಮ್ಮ ಪಾಪಗಳ ಕಾರಣ ನಾವು ನರಕಕ್ಕೆ ಹೋಗಬೇಕಾಗಿ ಬಂದರೂ ಅದು ಬೆರಳೆಣಿಕೆಯ ಕೆಲವು ದಿನಗಳವರೆಗೆ ಮಾತ್ರ.

83. "ಅಲ್ಲಾಹನನ್ನು ಬಿಟ್ಟು ಬೇರೆ ಯಾರನ್ನೂ ಆರಾಧಿಸಬೇಡಿ, ಮಾತಾಪಿತರಿಗೆ, ಸಂಬಂಧಿಕರಿಗೆ, ಅನಾಥರಿಗೆ ಹಾಗೂ ಬಡವರಿಗೆ ಒಳಿತು ಮಾಡಿರಿ; ಜನರೊಡನೆ ಒಳ್ಳೆಯ ಮಾತನ್ನು ಆಡಿರಿ; ನಮಾಝ್ ಸಂಸ್ಥಾಪಿಸಿರಿ ಮತ್ತು ಝಕಾತ್ ನೀಡಿರಿ" ಎಂದು (ಆದೇಶಿಸುತ್ತಾ) ನಾವು ಇಸ್ರಾಯೇಲ್ ಮಕ್ಕಳಿಂದ ಕರಾರು ಪಡೆದ ಸಂದರ್ಭ. ನಂತರ, ನಿಮ್ಮಲ್ಲಿ ಕೆಲವರ ಹೊರತು ಉಳಿದವರೆಲ್ಲವರೂ ನಿರ್ಲಕ್ಷಿಸುತ್ತಾ ವಿಮುಖರಾದಿರಿ.

وَإِذۡ أَخَذۡنَا مِيثَٰقَ بَنِيٓ إِسۡرَٰٓءِيلَ لَا تَعۡبُدُونَ إِلَّا ٱللَّهَ وَبِٱلۡوَٰلِدَيۡنِ إِحۡسَانٗا وَذِي ٱلۡقُرۡبَىٰ وَٱلۡيَتَٰمَىٰ وَٱلۡمَسَٰكِينِ وَقُولُواْ لِلنَّاسِ حُسۡنٗا وَأَقِيمُواْ ٱلصَّلَوٰةَ وَءَاتُواْ ٱلزَّكَوٰةَ ثُمَّ تَوَلَّيۡتُمۡ إِلَّا قَلِيلٗا مِّنكُمۡ وَأَنتُم مُّعۡرِضُونَ ٨٣

84. "ನೀವು ನಿಮ್ಮವರ ರಕ್ತ ಹರಿಸಬೇಡಿ ಮತ್ತು ನಿಮ್ಮ ಮನೆಗಳಿಂದ ನಿಮ್ಮವರನ್ನು ಹೊರಹಾಕಬೇಡಿ" ಎಂದು (ಆದೇಶಿಸುತ್ತಾ) ನಾವು ನಿಮ್ಮಿಂದ ಕರಾರು ಪಡೆದ ಸಂದರ್ಭ. ನಂತರ ನೀವು ಸಾಕ್ಷಿ ವಹಿಸುತ್ತಾ ಅದನ್ನು ಒಪ್ಪಿಕೊಂಡಿರಿ.

وَإِذۡ أَخَذۡنَا مِيثَٰقَكُمۡ لَا تَسۡفِكُونَ دِمَآءَكُمۡ وَلَا تُخۡرِجُونَ أَنفُسَكُم مِّن دِيَٰرِكُمۡ ثُمَّ أَقۡرَرۡتُمۡ وَأَنتُمۡ تَشۡهَدُونَ ٨٤

85. ನಂತರ, ನೀವು ನಿಮ್ಮವರನ್ನೇ ಕೊಲ್ಲುತ್ತೀರಿ, ನಿಮ್ಮವರ ಒಂದು ಗುಂಪನ್ನು ಅವರ ಮನೆಗಳಿಂದ ಹೊರಹಾಕುತ್ತೀರಿ; ಪಾಪ ಮತ್ತು ಅತಿರೇಕದಲ್ಲಿ ಅವರ ವಿರುದ್ಧ ಪರಸ್ಪರ ಸಹಕರಿಸುತ್ತೀರಿ; ಅವರು ನಿಮ್ಮ ಬಳಿಗೆ ಸೆರೆಯಾಳುಗಳಾಗಿ ಬಂದರೆ ಅವರಿಗೆ ಪರಿಹಾರವನ್ನು ನೀಡುತ್ತೀರಿ. ವಾಸ್ತವದಲ್ಲಿ, ಅವರನ್ನು ಹೊರಹಾಕುವುದನ್ನು ನಿಮಗೆ ನಿಷೇಧಿಸಲಾಗಿದ್ದರೂ (ನೀವು ಅದರ ಬಗ್ಗೆ ಯೋಚಿಸುವುದೇ ಇಲ್ಲ). ಹಾಗಾದರೆ, ನೀವು ಗ್ರಂಥದ ಕೆಲವು ಭಾಗಗಳಲ್ಲಿ ನಂಬಿಕೆಯಿಟ್ಟು ಕೆಲವು ಭಾಗಗಳನ್ನು ನಿಷೇಧಿಸುತ್ತೀರಾ? ನಿಮ್ಮ ಪೈಕಿ ಹೀಗೆ ಮಾಡುವವರಿಗೆ ಇಹಲೋಕದಲ್ಲಿ ಅವಮಾನವಲ್ಲದೆ ಇನ್ನೇನು ಪ್ರತಿಫಲವಿರಲು ಸಾಧ್ಯ? ಪುನರುತ್ಥಾನ ದಿನ ಅವರನ್ನು ಅತಿಕಠೋರ ಶಿಕ್ಷೆಗೆ ಮರಳಿಸಲಾಗುವುದು. ನೀವು ಮಾಡುತ್ತಿರುವ ಕರ್ಮಗಳ ಕುರಿತು ಅಲ್ಲಾಹು ತಿಳಿಯದವನಲ್ಲ.[1]

ثُمَّ أَنتُمۡ هَٰٓؤُلَآءِ تَقۡتُلُونَ أَنفُسَكُمۡ وَتُخۡرِجُونَ فَرِيقٗا مِّنكُم مِّن دِيَٰرِهِمۡ تَظَٰهَرُونَ عَلَيۡهِم بِٱلۡإِثۡمِ وَٱلۡعُدۡوَٰنِ وَإِن يَأۡتُوكُمۡ أُسَٰرَىٰ تُفَٰدُوهُمۡ وَهُوَ مُحَرَّمٌ عَلَيۡكُمۡ إِخۡرَاجُهُمۡۚ أَفَتُؤۡمِنُونَ بِبَعۡضِ ٱلۡكِتَٰبِ وَتَكۡفُرُونَ بِبَعۡضٖۚ فَمَا جَزَآءُ مَن يَفۡعَلُ ذَٰلِكَ مِنكُمۡ إِلَّا خِزۡيٞ فِي ٱلۡحَيَوٰةِ ٱلدُّنۡيَاۖ وَيَوۡمَ ٱلۡقِيَٰمَةِ يُرَدُّونَ إِلَىٰٓ أَشَدِّ ٱلۡعَذَابِۗ وَمَا ٱللَّهُ بِغَٰفِلٍ عَمَّا تَعۡمَلُونَ ٨٥

---

[1] ಮದೀನದಲ್ಲಿ ಔಸ್ ಮತ್ತು ಖಝ್ರಜ್ ಎಂಬ ಎರಡು ಗೋತ್ರಗಳಿದ್ದವು. ಇವರು ಪರಸ್ಪರ ವೈರಿಗಳಾಗಿದ್ದು ನಿರಂತರ ಯುದ್ಧ ಮಾಡುತ್ತಿದ್ದರು. ಅದೇ ರೀತಿ, ಮದೀನದ ಯಹೂದಿಗಳಲ್ಲಿ ಮೂರು ಗೋತ್ರಗಳಿದ್ದವು. ಬನೂ ಕೈನುಕಾ, ಬನೂ ನದೀರ್ ಮತ್ತು ಬನೂ ಕುರೈಝ. ಬನೂ ಕುರೈಝ ಗೋತ್ರದವರು ಔಸ್ ಗೋತ್ರದವರೊಡನೆ ಮತ್ತು ಬನೂ ಕೈನುಕಾ ಹಾಗೂ ಬನೂ ನದೀರ್ ಗೋತ್ರಗಳು ಖಝ್ರಜ್ ಗೋತ್ರದವರೊಡನೆ ಮೈತ್ರಿ ಮಾಡಿಕೊಂಡಿದ್ದರು. ಯುದ್ಧದಲ್ಲಿ ಅವರು ತಮ್ಮ ತಮ್ಮ ಮಿತ್ರರಿಗೆ ಸಹಾಯ ಮಾಡುತ್ತಿದ್ದರು. ಇದರಿಂದ ಯಹೂದಿಗಳು ಯಹೂದಿಗಳನ್ನೇ ಕೊಲ್ಲುತ್ತಿದ್ದರು ಮತ್ತು ಅವರ ಮನೆಗಳನ್ನು ಲೂಟಿ ಮಾಡಿ ಅವರನ್ನು ಮನೆಗಳಿಂದ ಹೊರದಬ್ಬುತ್ತಿದ್ದರು. ತೌರಾತ್ (ತೋರಾ) ನಿಯಮದ ಪ್ರಕಾರ ಯಹೂದಿಗಳು ಪರಸ್ಪರ ಕೊಲ್ಲುವುದು, ಲೂಟಿ ಮಾಡುವುದು, ಮನೆಗಳಿಂದ ಬಲವಂತವಾಗಿ ಹೊರದಬ್ಬುವುದು, ತಮ್ಮವರಿಗೆ ವಿರುದ್ಧವಾಗಿ ಹೊರಗಿನವರಿಗೆ ಸಹಾಯ ಮಾಡುವುದು ನಿಷಿದ್ಧವಾಗಿತ್ತು. ಆದರೆ ಅವರು ಈ ನಿಯಮವನ್ನು ಪಾಲಿಸುತ್ತಿರಲಿಲ್ಲ. ಆದರೆ ಯುದ್ಧ ಖೈದಿಗಳಾದ ಯಹೂದಿಗಳನ್ನು ಅವರು ಪರಸ್ಪರ ಪರಿಹಾರ ನೀಡಿ ಸ್ವತಂತ್ರಗೊಳಿಸುತ್ತಿದ್ದರು. ಈ ನಿಯಮ ತೋರದಲ್ಲಿದೆ ಮತ್ತು ನಾವು ಅದನ್ನು ಪಾಲಿಸಬೇಕಾಗಿದೆ ಎಂದು ಅವರು ಹೇಳುತ್ತಿದ್ದರು. ಹೀಗೆ ಅವರು ತಮಗೆ ಬೇಕಾದ ನಿಯಮವನ್ನು ಸ್ವೀಕರಿಸಿ ತಮಗೆ ಬೇಡದ ನಿಯಮವನ್ನು ತಿರಸ್ಕರಿಸುತ್ತಿದ್ದರು.

86. ಅವರೇ ಪರಲೋಕಕ್ಕೆ ಬದಲಿಯಾಗಿ ಇಹಲೋಕವನ್ನು ಖರೀದಿಸಿದವರು. ಆದ್ದರಿಂದ, ಅವರಿಗೆ ಶಿಕ್ಷೆಯಲ್ಲಿ ರಿಯಾಯಿತಿಯಿಲ್ಲ. ಅವರಿಗೆ ಯಾವುದೇ ಸಹಾಯವೂ ದೊರೆಯುವುದಿಲ್ಲ.

أُوْلَٰٓئِكَ ٱلَّذِينَ ٱشۡتَرَوُاْ ٱلۡحَيَوٰةَ ٱلدُّنۡيَا بِٱلۡأٓخِرَةِۖ فَلَا يُخَفَّفُ عَنۡهُمُ ٱلۡعَذَابُ وَلَا هُمۡ يُنصَرُونَ ٨٦

87. ನಿಶ್ಚಯವಾಗಿಯೂ ನಾವು ಮೂಸಾರಿಗೆ ಗ್ರಂಥವನ್ನು ನೀಡಿದೆವು. ಅವರ ಹಿಂದೆಯೇ ಹಲವಾರು ಸಂದೇಶವಾಹಕರುಗಳನ್ನು ಕಳುಹಿಸಿದೆವು. ಮರ್ಯಮರ ಮಗ ಈಸಾರಿಗೆ ನಾವು ಸ್ಪಷ್ಟ ಸಾಕ್ಷ್ಯಾಧಾರಗಳನ್ನು ನೀಡಿದೆವು ಮತ್ತು ಪವಿತ್ರಾತ್ಮನ ಮೂಲಕ ಅವರನ್ನು ಬೆಂಬಲಿಸಿದೆವು. ಆದರೆ ನಿಮಗೆ ಇಷ್ಟವಿಲ್ಲದ ವಿಷಯಗಳೊಂದಿಗೆ ಸಂದೇಶವಾಹಕರುಗಳು ನಿಮ್ಮ ಬಳಿಗೆ ಬಂದಾಗಲೆಲ್ಲಾ, ನೀವು ಅಹಂಕಾರ ತೋರಿದಿರಿ. ಅವರಲ್ಲಿ ಕೆಲವರನ್ನು ನೀವು ನಿಷೇಧಿಸಿದಿರಿ ಮತ್ತು ಕೆಲವರನ್ನು ಹತ್ಯೆ ಮಾಡಿದಿರಿ.

وَلَقَدۡ ءَاتَيۡنَا مُوسَى ٱلۡكِتَٰبَ وَقَفَّيۡنَا مِنۢ بَعۡدِهِۦ بِٱلرُّسُلِۖ وَءَاتَيۡنَا عِيسَى ٱبۡنَ مَرۡيَمَ ٱلۡبَيِّنَٰتِ وَأَيَّدۡنَٰهُ بِرُوحِ ٱلۡقُدُسِۗ أَفَكُلَّمَا جَآءَكُمۡ رَسُولُۢ بِمَا لَا تَهۡوَىٰٓ أَنفُسُكُمُ ٱسۡتَكۡبَرۡتُمۡ فَفَرِيقٗا كَذَّبۡتُمۡ وَفَرِيقٗا تَقۡتُلُونَ ٨٧

88. ಅವರು ಹೇಳಿದರು: “ನಮ್ಮ ಹೃದಯಗಳು ಮುಚ್ಚಿಕೊಂಡಿವೆ.” ಅಲ್ಲ; ವಾಸ್ತವವಾಗಿ ಅವರ ನಿಷೇಧದಿಂದಾಗಿ ಅಲ್ಲಾಹು ಅವರನ್ನು ಶಪಿಸಿದ್ದಾನೆ. ಆದ್ದರಿಂದ ಅವರು ಸ್ವಲ್ಪ ಮಾತ್ರ ವಿಶ್ವಾಸವಿಡುತ್ತಾರೆ.

وَقَالُواْ قُلُوبُنَا غُلۡفُۢۚ بَل لَّعَنَهُمُ ٱللَّهُ بِكُفۡرِهِمۡ فَقَلِيلٗا مَّا يُؤۡمِنُونَ ٨٨

89. ಅವರಲ್ಲಿರುವ (ಗ್ರಂಥವನ್ನು) ದೃಢೀಕರಿಸುವ ಒಂದು ಗ್ರಂಥವು (ಕುರ್‌ಆನ್) ಅಲ್ಲಾಹನ ಬಳಿಯಿಂದ ಅವರಿಗೆ ಬಂದಾಗ—ವಾಸ್ತವವಾಗಿ, ಇದಕ್ಕೆ ಮೊದಲು ಅವರು (ಅಂತಹ ಒಂದು ಗ್ರಂಥದ ಮೂಲಕ) ಸತ್ಯನಿಷೇಧಿಗಳ ವಿರುದ್ಧ ಗೆಲುವಿಗಾಗಿ ಪ್ರಾರ್ಥಿಸುತ್ತಿದ್ದರೂ ಸಹ—ಅವರಿಗೆ ಪರಿಚಿತವಾದ ಆ ಸಂದೇಶವು ಅವರ ಬಳಿಗೆ ಬಂದಾಗ ಅವರು ಅದನ್ನು ನಿಷೇಧಿಸಿದರು.[1] ಆದ್ದರಿಂದ ಸತ್ಯನಿಷೇಧಿಗಳ ಮೇಲೆ ಅಲ್ಲಾಹನ ಶಾಪವಿರಲಿ.

وَلَمَّا جَآءَهُمۡ كِتَٰبٞ مِّنۡ عِندِ ٱللَّهِ مُصَدِّقٞ لِّمَا مَعَهُمۡ وَكَانُواْ مِن قَبۡلُ يَسۡتَفۡتِحُونَ عَلَى ٱلَّذِينَ كَفَرُواْ فَلَمَّا جَآءَهُم مَّا عَرَفُواْ كَفَرُواْ بِهِۦۚ فَلَعۡنَةُ ٱللَّهِ عَلَى ٱلۡكَٰفِرِينَ ٨٩

90. ಅಲ್ಲಾಹು ಅವನ ದಾಸರಲ್ಲಿ ಅವನು ಇಚ್ಛಿಸುವವರಿಗೆ ಅವನ ಔದಾರ್ಯವನ್ನು ಇಳಿಸಿಕೊಡುತ್ತಾನೆ ಎಂಬ ಅಸೂಯೆಯಿಂದ, ಅಲ್ಲಾಹು ಅವತೀರ್ಣಗೊಳಿಸಿದ ಸಂದೇಶವನ್ನು ನಿಷೇಧಿಸುವ ರೀತಿಯಲ್ಲಿ ಅವರು ತಮ್ಮನ್ನು ತಾವೇ ಮಾರಿಕೊಂಡದ್ದು ಬಹಳ ನಿಕೃಷ್ಟವಾಗಿದೆ.[2] ಇದರಿಂದ ಅವರು ಕೋಪದ ಮೇಲೆ ಕೋಪಕ್ಕೆ

بِئۡسَمَا ٱشۡتَرَوۡاْ بِهِۦٓ أَنفُسَهُمۡ أَن يَكۡفُرُواْ بِمَآ أَنزَلَ ٱللَّهُ بَغۡيًا أَن يُنَزِّلَ ٱللَّهُ مِن فَضۡلِهِۦ عَلَىٰ مَن يَشَآءُ مِنۡ عِبَادِهِۦۖ فَبَآءُو بِغَضَبٍ عَلَىٰ غَضَبٖۚ وَلِلۡكَٰفِرِينَ عَذَابٞ مُّهِينٞ ٩٠

[1] ಬಹುದೇವವಿಶ್ವಾಸಿಗಳೊಡನೆ ಯುದ್ಧ ನಡೆಯುವಾಗಲೆಲ್ಲಾ ಅವರು ಹೀಗೆ ಪ್ರಾರ್ಥಿಸುತ್ತಿದ್ದರು: "ಓ ಅಲ್ಲಾಹ್! ಅಂತಿಮ ಪ್ರವಾದಿಯನ್ನು ಬೇಗನೇ ಕಳುಹಿಸು. ನಾವು ಆ ಪ್ರವಾದಿಯೊಂದಿಗೆ ಸೇರಿ ಈ ಬಹುದೇವವಿಶ್ವಾಸಿಗಳ ವಿರುದ್ಧ ಗೆಲುವು ಪಡೆಯುತ್ತೇವೆ." ಆದರೆ ಅಂತಿಮ ಪ್ರವಾದಿ ಬಂದಾಗ ಅವರು ಆ ಪ್ರವಾದಿಯ ಸಂದೇಶವನ್ನು (ಕುರ್‌ಆನನ್ನು) ತಿರಸ್ಕರಿಸಿ ಅವರ ವಿರುದ್ಧವೇ ದ್ವೇಷ ಕಟ್ಟಿಕೊಂಡರು.

[2] ಯಹೂದಿಗಳು ಅಂತಿಮ ಪ್ರವಾದಿಯ ಆಗಮನವನ್ನು ನಿರೀಕ್ಷಿಸುತ್ತಿದ್ದರು. ಅಂತಿಮ ಪ್ರವಾದಿಯ ಎಲ್ಲಾ ಗುಣಲಕ್ಷಣಗಳನ್ನು ಅವರ ಗ್ರಂಥಗಳಲ್ಲಿ

ಪಾತ್ರರಾದರು. ಆ ಸತ್ಯನಿಷೇಧಿಗಳಿಗೆ ಅಪಮಾನಕರ ಶಿಕ್ಷೆಯಿದೆ.

91. "ಅಲ್ಲಾಹು ಅವತೀರ್ಣಗೊಳಿಸಿದ ಗ್ರಂಥದಲ್ಲಿ (ಕುರ್‌ಆನ್‌ನಲ್ಲಿ) ವಿಶ್ವಾಸವಿಡಿ" ಎಂದು ಅವರೊಡನೆ ಹೇಳಲಾದರೆ, ಅವರು ಹೇಳುತ್ತಾರೆ: "ನಮಗೆ ಅವತೀರ್ಣವಾದ ಗ್ರಂಥದಲ್ಲಿ ನಾವು ವಿಶ್ವಾಸವಿಡುತ್ತೇವೆ." ವಾಸ್ತವವಾಗಿ, ಅದರ ನಂತರದ ಗ್ರಂಥವು (ಕುರ್‌ಆನ್) ಅವರ ಬಳಿಯಿರುವ ಗ್ರಂಥವನ್ನು ದೃಢೀಕರಿಸುವ ಸತ್ಯವಾಗಿದ್ದೂ ಸಹ ಅವರು ಅದನ್ನು ನಿಷೇಧಿಸುತ್ತಾರೆ. ಹೇಳಿರಿ: "ನೀವು ಸತ್ಯವನ್ನೇ ಹೇಳುವವರಾಗಿದ್ದರೆ, ಮೊದಲು ಬಂದ ಅಲ್ಲಾಹನ ಪ್ರವಾದಿಗಳನ್ನು ನೀವೇಕೆ ಕೊಲೆ ಮಾಡಿದಿರಿ?"[1]

وَإِذَا قِيلَ لَهُمْ ءَامِنُواْ بِمَآ أَنزَلَ ٱللَّهُ قَالُواْ نُؤْمِنُ بِمَآ أُنزِلَ عَلَيْنَا وَيَكْفُرُونَ بِمَا وَرَآءَهُۥ وَهُوَ ٱلْحَقُّ مُصَدِّقًا لِّمَا مَعَهُمْ ۗ قُلْ فَلِمَ تَقْتُلُونَ أَنۢبِيَآءَ ٱللَّهِ مِن قَبْلُ إِن كُنتُم مُّؤْمِنِينَ ﴿٩١﴾

92. ನಿಶ್ಚಯವಾಗಿಯೂ, ಮೂಸಾ ಸ್ಪಷ್ಟ ಸಾಕ್ಷ್ಯಾಧಾರಗಳೊಂದಿಗೆ ನಿಮ್ಮ ಬಳಿಗೆ ಬಂದಿದ್ದರು. ನಂತರ, ಅವರ (ನಿರ್ಗಮನದ) ಬಳಿಕ ನೀವು ಕರುವನ್ನು (ದೇವರಾಗಿ) ಮಾಡಿಕೊಂಡು ಅಕ್ರಮಿಗಳಾಗಿ ಬಿಟ್ಟಿರಿ.

وَلَقَدْ جَآءَكُم مُّوسَىٰ بِٱلْبَيِّنَٰتِ ثُمَّ ٱتَّخَذْتُمُ ٱلْعِجْلَ مِنۢ بَعْدِهِۦ وَأَنتُمْ ظَٰلِمُونَ ﴿٩٢﴾

93. ನಾವು ನಿಮ್ಮಿಂದ ಕರಾರನ್ನು ಪಡೆದ ಮತ್ತು ನಿಮ್ಮ ಮೇಲೆ ತೂರ್ ಪರ್ವತವನ್ನು ಎತ್ತಿಹಿಡಿದ ಸಂದರ್ಭ. (ನಾವು ಹೇಳಿದೆವು): "ನಾವು ನಿಮಗೆ ನೀಡಿದ್ದನ್ನು ಬಿಗಿಯಾಗಿ ಹಿಡಿಯಿರಿ ಮತ್ತು ಕಿವಿಗೊಟ್ಟು ಕೇಳಿರಿ." ಅವರು ಹೇಳಿದರು: "ನಾವು ಕೇಳಿದ್ದೇವೆ ಮತ್ತು ಅವಿಧೇಯತೆ ತೋರಿದ್ದೇವೆ." ಅವರ ಸತ್ಯನಿಷೇಧದಿಂದಾಗಿ ಅವರ ಹೃದಯಗಳಲ್ಲಿ ಕರುವಿನ ಪ್ರೀತಿಯು ಲೀನವಾಗಿಬಿಟ್ಟಿತ್ತು. ಹೇಳಿರಿ: "ನೀವು ಸತ್ಯವಿಶ್ವಾಸಿಗಳಾಗಿದ್ದರೆ ನಿಮ್ಮ ವಿಶ್ವಾಸವು ನಿಮಗೆ ಏನು ಆದೇಶಿಸುತ್ತಿದೆಯೋ ಅದು ಬಹಳ ನಿಕೃಷ್ಟವಾಗಿದೆ."

وَإِذْ أَخَذْنَا مِيثَٰقَكُمْ وَرَفَعْنَا فَوْقَكُمُ ٱلطُّورَ خُذُواْ مَآ ءَاتَيْنَٰكُم بِقُوَّةٍ وَٱسْمَعُواْ ۖ قَالُواْ سَمِعْنَا وَعَصَيْنَا وَأُشْرِبُواْ فِى قُلُوبِهِمُ ٱلْعِجْلَ بِكُفْرِهِمْ ۚ قُلْ بِئْسَمَا يَأْمُرُكُم بِهِۦٓ إِيمَٰنُكُمْ إِن كُنتُم مُّؤْمِنِينَ ﴿٩٣﴾

94. ಹೇಳಿರಿ: "ಅಲ್ಲಾಹನ ಬಳಿ ಪರಲೋಕ ಭವನವು ಇತರ ಜನರಿಗೆ ದೊರೆಯದೆ ಕೇವಲ ನಿಮಗೆ ಮಾತ್ರ ಇರುವುದಾದರೆ ನೀವು ಸಾವನ್ನು ಬಯಸಿರಿ. ನೀವು ಸತ್ಯವಂತರಾಗಿದ್ದರೆ!"

قُلْ إِن كَانَتْ لَكُمُ ٱلدَّارُ ٱلْءَاخِرَةُ عِندَ ٱللَّهِ خَالِصَةً مِّن دُونِ ٱلنَّاسِ فَتَمَنَّوُاْ ٱلْمَوْتَ إِن كُنتُمْ صَٰدِقِينَ ﴿٩٤﴾

95. ಆದರೆ ಅವರ ಕೈಗಳು ಮಾಡಿಟ್ಟಿರುವ (ದುಷ್ಕರ್ಮಗಳ) ನಿಮಿತ್ತ ಅವರೆಂದೂ ಸಾವನ್ನು ಬಯಸುವುದಿಲ್ಲ. ಅಲ್ಲಾಹು ಅಕ್ರಮಿಗಳ

وَلَن يَتَمَنَّوْهُ أَبَدًۢا بِمَا قَدَّمَتْ أَيْدِيهِمْ ۗ وَٱللَّهُ عَلِيمٌۢ بِٱلظَّٰلِمِينَ ﴿٩٥﴾

---

ವಿವರಿಸಲಾಗಿತ್ತು. ಪ್ರವಾದಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರಲ್ಲಿ ಈ ಎಲ್ಲಾ ಗುಣಲಕ್ಷಣಗಳಿದ್ದವು ಮತ್ತು ಅವರು ಅಂತಿಮ ಪ್ರವಾದಿಯೆಂದು ಯಹೂದಿಗಳಿಗೆ ಸಂಪೂರ್ಣ ಖಾತ್ರಿಯಿತ್ತು. ಆದರೆ ಅವರ ನಿರೀಕ್ಷೆಯಂತೆ ಆ ಪ್ರವಾದಿ ಯಹೂದಿ ವಂಶದಲ್ಲಿ ಹುಟ್ಟಲಿಲ್ಲ ಎಂಬ ಒಂದೇ ಕಾರಣಕ್ಕಾಗಿ ಅವರು ಪ್ರವಾದಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರನ್ನು ಮತ್ತು ಅವರು ತಂದ ಸಂದೇಶವನ್ನು ತಿರಸ್ಕರಿಸಿದರು.

[1] ನಾವು ತೌರಾತ್ (ತೋರಾ) ನಲ್ಲಿ ವಿಶ್ವಾಸವಿಟ್ಟಿದ್ದೇವೆ, ಆದ್ದರಿಂದ ನಮಗೆ ಕುರ್‌ಆನ್‌ನಲ್ಲಿ ವಿಶ್ವಾಸವಿಡಬೇಕಾದ ಅಗತ್ಯವಿಲ್ಲ ಎಂದು ಅವರು ಹೇಳುತ್ತಿದ್ದರು. ಆದರೆ ವಾಸ್ತವವಾಗಿ ಅವರು ತೌರಾತ್‌ನಲ್ಲೂ ಸರಿಯಾಗಿ ವಿಶ್ವಾಸವಿಟ್ಟಿರಲಿಲ್ಲ. ತೌರಾತ್‌ನಲ್ಲಿ ವಿಶ್ವಾಸವಿಟ್ಟಿದ್ದೇವೆಂಬ ಅವರ ಮಾತು ಸತ್ಯವಾಗಿದ್ದರೆ ಅವರು ತೌರಾತನ್ನು ಬೋಧಿಸಲು ಬಂದ ಪ್ರವಾದಿಗಳನ್ನು ಕೊಲೆ ಮಾಡುತ್ತಿರಲಿಲ್ಲ.

ಬಗ್ಗೆ ಬಹಳ ಚೆನ್ನಾಗಿ ತಿಳಿದಿದ್ದಾನೆ.

---

96. ಅವರಿಗೆ ಬದುಕಲು ಅತ್ಯಧಿಕ ಆಸಕ್ತಿಯಿರುವುದನ್ನು—ಬಹುದೇವವಿಶ್ವಾಸಿಗಳಿಗಿಂತಲೂ ಹೆಚ್ಚು ಆಸಕ್ತಿಯಿರುವುದನ್ನು—ನೀವು ಕಾಣುವಿರಿ. ಅವರಲ್ಲಿ ಪ್ರತಿಯೊಬ್ಬನೂ ಸಾವಿರ ವರ್ಷ ಆಯುಷ್ಯ ದೊರೆಯಬೇಕೆಂದು ಬಯಸುತ್ತಾನೆ. ಆದರೆ ದೀರ್ಘಾಯುಷ್ಯ ಸಿಗುವುದರಿಂದ ಅವನಿಗೆ ಶಿಕ್ಷೆಯಿಂದ ಮುಕ್ತಿ ಸಿಗುವುದಿಲ್ಲ. ಅವರು ಮಾಡುತ್ತಿರುವ ಕರ್ಮಗಳನ್ನು ಅಲ್ಲಾಹು ನೋಡುತ್ತಿದ್ದಾನೆ.

وَلَتَجِدَنَّهُمۡ أَحۡرَصَ ٱلنَّاسِ عَلَىٰ حَيَوٰةٖ وَمِنَ ٱلَّذِينَ أَشۡرَكُواْۚ يَوَدُّ أَحَدُهُمۡ لَوۡ يُعَمَّرُ أَلۡفَ سَنَةٖ وَمَا هُوَ بِمُزَحۡزِحِهِۦ مِنَ ٱلۡعَذَابِ أَن يُعَمَّرَۗ وَٱللَّهُ بَصِيرُۢ بِمَا يَعۡمَلُونَ ﴿٩٦﴾

---

97. ಹೇಳಿರಿ: “ಯಾರು ಜಿಬ್ರೀಲರಿಗೆ ವೈರಿಯೋ (ಅವನು ಅಲ್ಲಾಹನಿಗೂ ವೈರಿಯಾಗಿದ್ದಾನೆ).”[1] (ಏಕೆಂದರೆ) ನಿಶ್ಚಯವಾಗಿಯೂ ಜಿಬ್ರೀಲ್ ಅದನ್ನು (ಕುರ್‌ಆನನ್ನು) ನಿಮ್ಮ ಹೃದಯದಲ್ಲಿ ಅವತೀರ್ಣಗೊಳಿಸಿದ್ದು ಅಲ್ಲಾಹನ ಆದೇಶದಂತೆ ಮಾತ್ರ. ಅದು ಪೂರ್ವಗ್ರಂಥಗಳನ್ನು ದೃಢೀಕರಿಸುತ್ತದೆ ಮತ್ತು ಸತ್ಯವಿಶ್ವಾಸಿಗಳಿಗೆ ಸನ್ಮಾರ್ಗ ಹಾಗೂ ಸುವಾರ್ತೆಯಾಗಿದೆ.

قُلۡ مَن كَانَ عَدُوّٗا لِّجِبۡرِيلَ فَإِنَّهُۥ نَزَّلَهُۥ عَلَىٰ قَلۡبِكَ بِإِذۡنِ ٱللَّهِ مُصَدِّقٗا لِّمَا بَيۡنَ يَدَيۡهِ وَهُدٗى وَبُشۡرَىٰ لِلۡمُؤۡمِنِينَ ﴿٩٧﴾

---

98. ಯಾರು ಅಲ್ಲಾಹನಿಗೆ, ಅವನ ದೇವದೂತರುಗಳಿಗೆ, ಅವನ ಸಂದೇಶವಾಹಕರುಗಳಿಗೆ, ಜಿಬ್ರೀಲರಿಗೆ ಮತ್ತು ಮೀಕಾಯೀಲರಿಗೆ ವೈರಿಯೋ—ನಿಶ್ಚಯವಾಗಿಯೂ ಅಲ್ಲಾಹು ಆ ಸತ್ಯನಿಷೇಧಿಗಳಿಗೂ ವೈರಿಯಾಗಿದ್ದಾನೆ.

مَن كَانَ عَدُوّٗا لِّلَّهِ وَمَلَـٰٓئِكَتِهِۦ وَرُسُلِهِۦ وَجِبۡرِيلَ وَمِيكَىٰلَ فَإِنَّ ٱللَّهَ عَدُوّٞ لِّلۡكَٰفِرِينَ ﴿٩٨﴾

---

99. ನಿಶ್ಚಯವಾಗಿಯೂ ನಾವು ನಿಮಗೆ ಸ್ಪಷ್ಟ ವಚನಗಳನ್ನು ಅವತೀರ್ಣಗೊಳಿಸಿದ್ದೇವೆ. ದುಷ್ಕರ್ಮಿಗಳ ಹೊರತು ಇನ್ನಾರೂ ಅದನ್ನು ನಿಷೇಧಿಸುವುದಿಲ್ಲ.

وَلَقَدۡ أَنزَلۡنَآ إِلَيۡكَ ءَايَٰتِۭ بَيِّنَٰتٖۖ وَمَا يَكۡفُرُ بِهَآ إِلَّا ٱلۡفَٰسِقُونَ ﴿٩٩﴾

---

100. ಅವರು ಯಾವುದೇ ಕರಾರು ಮಾಡಿದಾಗಲೂ ಅವರಲ್ಲೊಂದು ಗುಂಪು ಅದನ್ನು ಎಸೆದು ಬಿಡುತ್ತಿತ್ತು. ಅಷ್ಟೇ ಅಲ್ಲ, ಅವರಲ್ಲಿ ಹೆಚ್ಚಿನವರಿಗೆ ವಿಶ್ವಾಸವೇ ಇರಲಿಲ್ಲ.

أَوَكُلَّمَا عَٰهَدُواْ عَهۡدٗا نَّبَذَهُۥ فَرِيقٞ مِّنۡهُمۚ بَلۡ أَكۡثَرُهُمۡ لَا يُؤۡمِنُونَ ﴿١٠٠﴾

---

101. ಅವರಲ್ಲಿರುವ ಗ್ರಂಥವನ್ನು ದೃಢೀಕರಿಸುತ್ತಾ ಅಲ್ಲಾಹನ

وَلَمَّا جَآءَهُمۡ رَسُولٞ مِّنۡ عِندِ ٱللَّهِ مُصَدِّقٞ

---

[1] ಒಮ್ಮೆ ಕೆಲವು ಯಹೂದಿಗಳು ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಬಳಿಗೆ ಬಂದು ಹೇಳಿದರು: “ನಾವು ನಿಮ್ಮಲ್ಲಿ ಕೆಲವು ಪ್ರಶ್ನೆಗಳನ್ನು ಕೇಳುತ್ತೇವೆ. ನೀವು ಸರಿಯಾಗಿ ಉತ್ತರ ಕೊಟ್ಟರೆ ನಾವು ನಿಮ್ಮಲ್ಲಿ ವಿಶ್ವಾಸವಿಡುತ್ತೇವೆ. ಏಕೆಂದರೆ ಒಬ್ಬ ಪ್ರವಾದಿಯ ಹೊರತು ಬೇರೆ ಯಾರಿಗೂ ಸರಿಯಾದ ಉತ್ತರ ಕೊಡಲು ಸಾಧ್ಯವಿಲ್ಲ.” ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅವರ ಪ್ರಶ್ನೆಗಳಿಗೆ ಸರಿಯಾದ ಉತ್ತರವನ್ನು ಕೊಟ್ಟರು. ಆಗ ಯಹೂದಿಗಳು ಕೇಳಿದರು: “ನಿಮಗೆ ಇವುಗಳ ಉತ್ತರವನ್ನು ತಂದು ಕೊಡುವ ದೇವದೂತರು ಯಾರು?” ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಜಿಬ್ರೀಲ್ ಎಂದು ಉತ್ತರಿಸಿದರು. ಆಗ ಅವರು ಹೇಳಿದರು: “ಜಿಬ್ರೀಲರು ನಮ್ಮ ವೈರಿ. ಅವರು ಹೇಳಿದ ಮಾತಿನಲ್ಲಿ ನಾವು ವಿಶ್ವಾಸವಿಡುವುದಿಲ್ಲ.” ಹೀಗೆ ಅವರು ಪ್ರವಾದಿಯವರಲ್ಲಿ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ವಿಶ್ವಾಸವಿಡದೆ ನುಣುಚಿಕೊಂಡರು.

ಕಡೆಯಿಂದ ಒಬ್ಬ ಸಂದೇಶವಾಹಕರು ಅವರ ಬಳಿಗೆ ಬಂದಾಗ, ಗ್ರಂಥ ನೀಡಲಾದವರಲ್ಲಿ ಸೇರಿದ ಒಂದು ಗುಂಪು ಅಲ್ಲಾಹನ ಗ್ರಂಥವನ್ನು, ಅದರ ಬಗ್ಗೆ ಏನೂ ತಿಳಿಯದವರಂತೆ ತಮ್ಮ ಬೆನ್ನ ಹಿಂಭಾಗಕ್ಕೆ ಎಸೆದು ಬಿಟ್ಟರು.

لِّمَا مَعَهُمْ نَبَذَ فَرِيقٌ مِّنَ ٱلَّذِينَ أُوتُوا۟ ٱلْكِتَٰبَ
كِتَٰبَ ٱللَّهِ وَرَآءَ ظُهُورِهِمْ كَأَنَّهُمْ لَا
يَعْلَمُونَ ١٠١

102. ಶೈತಾನರು ಸುಲೈಮಾನರ ಆಡಳಿತಕಾಲದಲ್ಲಿ ಪಠಿಸುತ್ತಿದ್ದ ವಿಷಯಗಳನ್ನು ಅವರು ಹಿಂಬಾಲಿಸಿದರು. ಸುಲೈಮಾನ್ ಸತ್ಯ-ನಿಷೇಧಿಯಾಗಿರಲಿಲ್ಲ. ಆದರೆ ಶೈತಾನರು ಸತ್ಯನಿಷೇಧಿಗಳಾಗಿ-ದ್ದರು.[1] ಅವರು ಜನರಿಗೆ ಮಾಟಗಾರಿಕೆಯನ್ನು ಮತ್ತು ಬ್ಯಾ-ಬಿಲೋನಿಯಾದಲ್ಲಿ ಹಾರೂತ್ ಮತ್ತು ಮಾರೂತ್ ಎಂಬ ಎರಡು ದೇವದೂತರಿಗೆ ಅವತೀರ್ಣವಾಗುತ್ತಿದ್ದ ವಿಷಯಗಳನ್ನು ಕಲಿಸುತ್ತಿದ್ದರು. ಆದರೆ, "ನಾವೊಂದು ಪರೀಕ್ಷೆಯಾಗಿದ್ದೇವೆ; ಆದ್ದರಿಂದ ನೀವು ಸತ್ಯನಿಷೇಧಿಗಳಾಗಬೇಡಿ" ಎಂದು ಹೇಳದೆ ಅವರಿಬ್ಬರು (ಹಾರೂತ್ ಮತ್ತು ಮಾರೂತ್) ಯಾರಿಗೂ ಕಲಿಸಿ-ಕೊಡುತ್ತಿರಲಿಲ್ಲ. ಹೀಗೆ ಜನರು ಅವರಿಬ್ಬರಿಂದ ಗಂಡ-ಹೆಂಡತಿಯ ನಡುವೆ ಒಡಕು ಮೂಡಿಸುವ ತಂತ್ರಗಳನ್ನು ಕಲಿಯುತ್ತಿದ್ದರು. ಆದರೆ ಅಲ್ಲಾಹನ ಅಪ್ಪಣೆಯಿಲ್ಲದೆ ಯಾರಿಗೂ ಯಾವುದೇ ತೊಂದರೆ ಮಾಡಲು ಅವರಿಗೆ ಸಾಧ್ಯವಿಲ್ಲ. ಸ್ವತಃ ಅವರಿಗೆ ತೊಂದರೆಯಾಗುವ ಮತ್ತು ಅವರಿಗೆ ಯಾವುದೇ ಪ್ರಯೋಜನ ನೀಡದ ವಿಷಯಗಳನ್ನು ಅವರು ಕಲಿಯುತ್ತಿದ್ದರು. ಅದನ್ನು ಪಡೆದವರಿಗೆ ಪರಲೋಕದಲ್ಲಿ ಯಾವುದೇ ಪಾಲಿಲ್ಲವೆಂದು ಅವರು ದೃಢವಾಗಿ ತಿಳಿದಿದ್ದರು. ಅವರು ಯಾವುದಕ್ಕೆ ತಮ್ಮ ಆತ್ಮಗಳನ್ನು ಮಾರಿಕೊಂಡರೋ ಅದು ಬಹಳ ನಿಕೃಷ್ಟವಾಗಿದೆ. ಅವರು ಅದನ್ನು ತಿಳಿದಿದ್ದರೆ (ಎಷ್ಟು ಚೆನ್ನಾಗಿತ್ತು)!

وَٱتَّبَعُوا۟ مَا تَتْلُوا۟ ٱلشَّيَٰطِينُ عَلَىٰ مُلْكِ سُلَيْمَٰنَ ۖ
وَمَا كَفَرَ سُلَيْمَٰنُ وَلَٰكِنَّ ٱلشَّيَٰطِينَ
كَفَرُوا۟ يُعَلِّمُونَ ٱلنَّاسَ ٱلسِّحْرَ وَمَآ أُنزِلَ
عَلَى ٱلْمَلَكَيْنِ بِبَابِلَ هَٰرُوتَ وَمَٰرُوتَ ۚ وَمَا
يُعَلِّمَانِ مِنْ أَحَدٍ حَتَّىٰ يَقُولَآ إِنَّمَا نَحْنُ فِتْنَةٌ
فَلَا تَكْفُرْ ۖ فَيَتَعَلَّمُونَ مِنْهُمَا مَا يُفَرِّقُونَ
بِهِۦ بَيْنَ ٱلْمَرْءِ وَزَوْجِهِۦ ۚ وَمَا هُم بِضَآرِّينَ بِهِۦ
مِنْ أَحَدٍ إِلَّا بِإِذْنِ ٱللَّهِ ۚ وَيَتَعَلَّمُونَ مَا يَضُرُّهُمْ
وَلَا يَنفَعُهُمْ ۚ وَلَقَدْ عَلِمُوا۟ لَمَنِ ٱشْتَرَىٰهُ مَا لَهُۥ
فِى ٱلْءَاخِرَةِ مِنْ خَلَٰقٍ ۚ وَلَبِئْسَ مَا شَرَوْا۟ بِهِۦٓ
أَنفُسَهُمْ ۚ لَوْ كَانُوا۟ يَعْلَمُونَ ١٠٢

103. ಅವರು ವಿಶ್ವಾಸವಿಟ್ಟವರು ಮತ್ತು ದೇವಭಯವುಳ್ಳವರಾಗಿದ್ದರೆ, ಅವರಿಗೆ ಅಲ್ಲಾಹನಿಂದ ಉತ್ತಮ ಪ್ರತಿಫಲವು ದೊರೆಯುತ್ತಿತ್ತು.

وَلَوْ أَنَّهُمْ ءَامَنُوا۟ وَٱتَّقَوْا۟ لَمَثُوبَةٌ مِّنْ عِندِ ٱللَّهِ
خَيْرٌ ۖ لَّوْ كَانُوا۟ يَعْلَمُونَ ١٠٣

[1] ಯಹೂದಿಗಳು ಅಲ್ಲಾಹನ ಗ್ರಂಥವನ್ನು ಮತ್ತು ಕರಾರುಗಳನ್ನು ಲೆಕ್ಕಿಸದೆ ಶೈತಾನರ ಹಿಂದೆ ಬಿದ್ದರು. ಅವರು ಶೈತಾನರಿಂದ ಮಾಟಗಾರಿಕೆಯ-ನ್ನು ಕಲಿತದ್ದು ಮಾತ್ರವಲ್ಲದೆ ಪ್ರವಾದಿ ಸುಲೈಮಾನ್ (ಅವರ ಮೇಲೆ ಶಾಂತಿಯಿರಲಿ) ಪ್ರವಾದಿಯಲ್ಲ, ಬದಲಿಗೆ ಅವರೊಬ್ಬ ಮಾಟಗಾರನೆಂದು ಪ್ರಚಾರ ಮಾಡತೊಡಗಿದರು. ಆದರೆ ಪ್ರವಾದಿ ಸುಲೈಮಾನ್ (ಅವರ ಮೇಲೆ ಶಾಂತಿಯಿರಲಿ) ಮಾಟಗಾರಿಕೆ ಮಾಡುತ್ತಿರಲಿಲ್ಲ. ಏಕೆಂದರೆ ಮಾಟಗಾರಿಕೆ ಮಾಡುವುದು ಸತ್ಯನಿಷೇಧವಾಗಿದೆ. ಒಬ್ಬ ಪ್ರವಾದಿ ಸತ್ಯನಿಷೇಧವನ್ನು ಹೇಗೆ ತಾನೇ ಮಾಡಲು ಸಾಧ್ಯ ಎಂದು ಅಲ್ಲಾಹು ಇಲ್ಲಿ ಸ್ಪಷ್ಟಪಡಿಸುತ್ತಾನೆ. ಇನ್ನೊಂದು ವರದಿಯ ಪ್ರಕಾರ ಸುಲೈಮಾನರ ಕಾಲದಲ್ಲಿ ಮಾಟಗಾರಿಕೆಯು ವ್ಯಾಪಕವಾಗಿ ಹರಡಿಕೊಂಡಿತ್ತು. ಆದ್ದರಿಂದ ಮುಂಜಾಗ್ರತಾ ಕ್ರಮವಾಗಿ ಸುಲೈಮಾನರು ಮಾಟಗಾರಿಕೆಯನ್ನು ಕಲಿಸುವ ಎಲ್ಲಾ ಪುಸ್ತಕಗಳನ್ನು ವಶಪಡಿಸಿಕೊಂಡು ತನ್ನ ಸಿಂಹಾಸನದ ಅಡಿಯಲ್ಲಿ ದಫನ ಮಾಡಿದರು. ಅವರ ಮರಣಾನಂತರ ಶೈತಾನರು ಮಾಟಗಾರರೊಂದಿಗೆ ಸೇರಿಕೊಂಡು ಆ ಪುಸ್ತಕಗಳನ್ನು ಹೊರತೆಗೆದರು. ಅವುಗಳನ್ನು ಜನರಿಗೆ ತೋರಿಸಿ ಸುಲೈಮಾನರು ಆಡಳಿತ ಮಾಡುತ್ತಿದ್ದದ್ದು ಈ ಮಾಟಗಾರಿಕೆಯ ಆಧಾರದಲ್ಲಾಗಿತ್ತು ಎಂದು ಹೇಳಿದರು. ಇದನ್ನು ಕಂಡು ಅತಿರೇಕಿಗಳಾದ ಕೆಲವರು ಸುಲೈಮಾನರನ್ನು (ಅವರ ಮೇಲೆ ಶಾಂತಿಯಿರಲಿ) ಸತ್ಯನಿಷೇಧಿ ಎಂದು ಜರೆದರು.

ಅವರು ಅದನ್ನು ತಿಳಿದಿದ್ದರೆ (ಎಷ್ಟು ಚೆನ್ನಾಗಿತ್ತು)!

---

**104.** ಓ ಸತ್ಯವಿಶ್ವಾಸಿಗಳೇ! ನೀವು (ಪ್ರವಾದಿಯೊಡನೆ) 'ರಾಇನಾ' ಎಂದು ಹೇಳಬೇಡಿ.[1] ಬದಲಿಗೆ, 'ಉನ್‌ಝುರ್‌ನಾ' ಎಂದು ಹೇಳಿರಿ ಮತ್ತು ಕಿವಿಗೊಟ್ಟು ಕೇಳಿರಿ. ಸತ್ಯನಿಷೇಧಿಗಳಿಗೆ ಯಾತನಾಮಯ ಶಿಕ್ಷೆಯಿದೆ.

يَٰٓأَيُّهَا ٱلَّذِينَ ءَامَنُواْ لَا تَقُولُواْ رَٰعِنَا وَقُولُواْ ٱنظُرۡنَا وَٱسۡمَعُواْۗ وَلِلۡكَٰفِرِينَ عَذَابٌ أَلِيمٞ ١٠٤

---

**105.** ನಿಮಗೆ ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಏನಾದರೂ ಒಳಿತು ಅವತೀರ್ಣವಾಗುವುದು ಗ್ರಂಥದವರಲ್ಲಿ ಮತ್ತು ಬಹುದೇ-ವಾರಾಧಕರಲ್ಲಿ ಸೇರಿದ ಸತ್ಯನಿಷೇಧಿಗಳಿಗೆ ಸ್ವಲ್ಪವೂ ಇಷ್ಟವಿಲ್ಲ. ಅಲ್ಲಾಹು ಅವನು ಇಚ್ಛಿಸುವವರಿಗೆ ಅವನ ದಯೆಯಿಂದ ವಿಶೇಷವಾಗಿ ಕರುಣಿಸುತ್ತಾನೆ. ಅಲ್ಲಾಹು ಮಹಾ ಔದಾರ್ಯದ ಒಡೆಯನಾಗಿದ್ದಾನೆ.

مَّا يَوَدُّ ٱلَّذِينَ كَفَرُواْ مِنۡ أَهۡلِ ٱلۡكِتَٰبِ وَلَا ٱلۡمُشۡرِكِينَ أَن يُنَزَّلَ عَلَيۡكُم مِّنۡ خَيۡرٖ مِّن رَّبِّكُمۡۚ وَٱللَّهُ يَخۡتَصُّ بِرَحۡمَتِهِۦ مَن يَشَآءُۚ وَٱللَّهُ ذُو ٱلۡفَضۡلِ ٱلۡعَظِيمِ ١٠٥

---

**106.** ನಾವು ಯಾವುದಾದರೂ ವಚನವನ್ನು ರದ್ದುಗೊಳಿಸಿದರೆ, ಅಥವಾ ಮರೆಯುವಂತೆ ಮಾಡಿದರೆ, ಅದಕ್ಕಿಂತಲೂ ಉತ್ತಮ-ವಾದುದನ್ನು ಅಥವಾ ಅದಕ್ಕೆ ಸಮಾನವಾದುದನ್ನು ತರುವೆವು. ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯ-ವುಳ್ಳವನೆಂದು ನಿಮಗೆ ತಿಳಿದಿಲ್ಲವೇ?

مَا نَنسَخۡ مِنۡ ءَايَةٍ أَوۡ نُنسِهَا نَأۡتِ بِخَيۡرٖ مِّنۡهَآ أَوۡ مِثۡلِهَآۗ أَلَمۡ تَعۡلَمۡ أَنَّ ٱللَّهَ عَلَىٰ كُلِّ شَيۡءٖ قَدِيرٌ ١٠٦

---

**107.** ಭೂಮ್ಯಾಕಾಶಗಳ ಸಾರ್ವಭೌಮತ್ವವು ಅಲ್ಲಾಹನಿಗೆ ಮಾತ್ರ ಸೇರಿದ್ದೆಂದು ಮತ್ತು ಅಲ್ಲಾಹನ ಹೊರತು ನಿಮಗೆ ಯಾವುದೇ ರಕ್ಷಕನೋ, ಸಹಾಯಕನೋ ಇಲ್ಲವೆಂದು ನಿಮಗೆ ತಿಳಿದಿಲ್ಲವೇ?

أَلَمۡ تَعۡلَمۡ أَنَّ ٱللَّهَ لَهُۥ مُلۡكُ ٱلسَّمَٰوَٰتِ وَٱلۡأَرۡضِۗ وَمَا لَكُم مِّن دُونِ ٱللَّهِ مِن وَلِيّٖ وَلَا نَصِيرٍ ١٠٧

---

**108.** ಹಿಂದೆ ಮೂಸಾರೊಡನೆ ಅವರ ಅನುಯಾಯಿಗಳು ಕೇಳಿದಂತೆ ನಿಮ್ಮ ಸಂದೇಶವಾಹಕರೊಡನೆ ಕೇಳಲು ನೀವು ಬಯಸುತ್ತೀರಾ? ಯಾರು ಸತ್ಯವಿಶ್ವಾಸವನ್ನು ಸತ್ಯನಿಷೇಧಕ್ಕೆ ಬದಲಾಯಿಸುತ್ತಾನೋ ಅವನು ನೇರ ಮಾರ್ಗದಿಂದ ತಪ್ಪಿ ಹೋಗುತ್ತಾನೆ.

أَمۡ تُرِيدُونَ أَن تَسۡـَٔلُواْ رَسُولَكُمۡ كَمَا سُئِلَ مُوسَىٰ مِن قَبۡلُۗ وَمَن يَتَبَدَّلِ ٱلۡكُفۡرَ بِٱلۡإِيمَٰنِ فَقَدۡ ضَلَّ سَوَآءَ ٱلسَّبِيلِ ١٠٨

---

**109.** ಗ್ರಂಥದವರಲ್ಲಿ ಹೆಚ್ಚಿನವರು ಅವರಿಗೆ ಸತ್ಯವೇನೆಂದು ಸ್ಪಷ್ಟವಾದ ಬಳಿಕವೂ ಕೇವಲ ಅಸೂಯೆ ಮತ್ತು ದ್ವೇಷದಿಂದ ನಿಮ್ಮನ್ನು ಸತ್ಯವಿಶ್ವಾಸದಿಂದ ತಪ್ಪಿಸಿ ಸತ್ಯನಿಷೇಧಿಗಳಾಗಿ ಮಾಡಲು

وَدَّ كَثِيرٞ مِّنۡ أَهۡلِ ٱلۡكِتَٰبِ لَوۡ يَرُدُّونَكُم مِّنۢ بَعۡدِ إِيمَٰنِكُمۡ كُفَّارًا حَسَدٗا مِّنۡ عِندِ أَنفُسِهِم مِّنۢ بَعۡدِ مَا تَبَيَّنَ لَهُمُ ٱلۡحَقُّۖ فَٱعۡفُواْ وَٱصۡفَحُواْ

---

[1] ರಾಇನಾ ಎಂದರೆ ನಮ್ಮ ಕಡೆಗೆ ಗಮನಹರಿಸಿ ಎಂದರ್ಥ. ಶಿಷ್ಯರಿಗೆ ಮಾತು ಅರ್ಥವಾಗದಿದ್ದರೆ ಈ ಪದವನ್ನು ಹೇಳಿ ಅವರು ಗುರುವಿನ ಗಮನ ಸೆಳೆಯುತ್ತಿದ್ದರು. ಆದರೆ ಯಹೂದಿಗಳು ಈ ಪದವನ್ನು ದ್ವಂದ್ವಾರ್ಥದಲ್ಲಿ ಬಳಸುತ್ತಿದ್ದರು. ಕೆಲವೊಮ್ಮೆ ಅವರು ನಮ್ಮ ಕುರಿಗಳನ್ನು ಕಾಯುವವನು ಎಂಬ ಅರ್ಥದಲ್ಲಿ "ರಾಈನಾ" ಎಂದು ಹೇಳುತ್ತಿದ್ದರು. ಕೆಲವೊಮ್ಮೆ ಅವಿವೇಕಿ ಎಂಬರ್ಥದಲ್ಲಿ "ರಾಇನಾ" ಎಂಬ ಪದವನ್ನು ಬಳಸುತ್ತಿದ್ದರು. ಆದ್ದರಿಂದ ಅಲ್ಲಾಹು ಅದರ ಬದಲಿಗೆ "ಉನ್‌ಝುರ್‌ನಾ" ಎಂಬ ಪದವನ್ನು ಬಳಸಲು ಆದೇಶಿಸಿದನು. ಉನ್‌ಝುರ್‌ನಾ ಎಂದರೆ ನಮ್ಮ ಕಡೆಗೆ ಗಮನ ನೀಡಿರಿ ಎಂದರ್ಥ.

ಬಯಸುತ್ತಾರೆ. ಅಲ್ಲಾಹು ತನ್ನ ಆಜ್ಞೆಯನ್ನು ತರುವವರೆಗೆ ನೀವು ಅವರನ್ನು ಕ್ಷಮಿಸಿರಿ ಮತ್ತು ನಿರ್ಲಕ್ಷಿಸಿರಿ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

حَتَّىٰ يَأۡتِيَ ٱللَّهُ بِأَمۡرِهِۦٓۗ إِنَّ ٱللَّهَ عَلَىٰ كُلِّ شَيۡءٖ قَدِيرٞ ١٠٩

---

110. ನೀವು ನಮಾಝ್ ಸಂಸ್ಥಾಪಿಸಿರಿ ಮತ್ತು ಝಕಾತ್ ನೀಡಿರಿ. ನೀವು ನಿಮಗಾಗಿ ಯಾವೆಲ್ಲಾ ಸತ್ಕಾರ್ಯಗಳನ್ನು ಮುಂದಕ್ಕೆ ಕಳುಹಿಸುತ್ತೀರೋ ಅವೆಲ್ಲವನ್ನೂ ನೀವು ಅಲ್ಲಾಹನ ಬಳಿ ಕಾಣುವಿರಿ. ನಿಶ್ಚಯವಾಗಿಯೂ ಅಲ್ಲಾಹು ನೀವು ಮಾಡುವ ಕರ್ಮಗಳನ್ನು ನೋಡುತ್ತಿದ್ದಾನೆ.

وَأَقِيمُواْ ٱلصَّلَوٰةَ وَءَاتُواْ ٱلزَّكَوٰةَۚ وَمَا تُقَدِّمُواْ لِأَنفُسِكُم مِّنۡ خَيۡرٖ تَجِدُوهُ عِندَ ٱللَّهِۗ إِنَّ ٱللَّهَ بِمَا تَعۡمَلُونَ بَصِيرٞ ١١٠

---

111. ಅವರು ಹೇಳುತ್ತಾರೆ: "ಯಹೂದಿ ಅಥವಾ ಕ್ರೈಸ್ತರ ಹೊರತು ಇನ್ನಾರೂ ಸ್ವರ್ಗಕ್ಕೆ ಹೋಗುವುದಿಲ್ಲ." ಅವೆಲ್ಲವೂ ಅವರ ಗುಮಾನಿಗಳಾಗಿವೆ. ಹೇಳಿರಿ: "ನೀವು ಸತ್ಯವಂತರಾಗಿದ್ದರೆ ನಿಮ್ಮ ಪುರಾವೆಯನ್ನು ತನ್ನಿರಿ."

وَقَالُواْ لَن يَدۡخُلَ ٱلۡجَنَّةَ إِلَّا مَن كَانَ هُودًا أَوۡ نَصَٰرَىٰۗ تِلۡكَ أَمَانِيُّهُمۡۗ قُلۡ هَاتُواْ بُرۡهَٰنَكُمۡ إِن كُنتُمۡ صَٰدِقِينَ ١١١

---

112. ಹೌದು! ಯಾರು ನಿಷ್ಕಳಂಕತೆಯಿಂದ ತನ್ನನ್ನು ತಾನೇ ಅಲ್ಲಾಹನಿಗೆ ಶರಣಾಗಿಸುತ್ತಾನೋ ಅವನಿಗೆ ಅವನ ಪ್ರತಿಫಲವು ಅವನ ಪರಿಪಾಲಕನ (ಅಲ್ಲಾಹನ) ಬಳಿಯಿದೆ. ಅವರಿಗೆ ಯಾವುದೇ ಭಯವಿಲ್ಲ; ಅವರು ದುಃಖಿಸುವುದೂ ಇಲ್ಲ.

بَلَىٰۚ مَنۡ أَسۡلَمَ وَجۡهَهُۥ لِلَّهِ وَهُوَ مُحۡسِنٞ فَلَهُۥٓ أَجۡرُهُۥ عِندَ رَبِّهِۦ وَلَا خَوۡفٌ عَلَيۡهِمۡ وَلَا هُمۡ يَحۡزَنُونَ ١١٢

---

113. ಕ್ರೈಸ್ತರು ಸತ್ಯದಲ್ಲಿಲ್ಲ ಎಂದು ಯಹೂದಿಗಳು ಹೇಳುತ್ತಾರೆ. ಯಹೂದಿಗಳು ಸತ್ಯದಲ್ಲಿಲ್ಲ ಎಂದು ಕ್ರೈಸ್ತರು ಹೇಳುತ್ತಾರೆ. ವಾಸ್ತವವಾಗಿ, ಅವರೆಲ್ಲರೂ ಗ್ರಂಥವನ್ನು (ತೋರಾ) ಪಠಿಸುತ್ತಾರೆ. ತಿಳುವಳಿಕೆಯಿಲ್ಲದ ಜನರು ಕೂಡ ಅವರು ಹೇಳಿದಂತೆಯೇ ಹೇಳುತ್ತಾರೆ. ಅವರು ಯಾವ ವಿಷಯದಲ್ಲಿ ಭಿನ್ನಮತ ತಳೆದರೋ ಅದರ ಬಗ್ಗೆ ಪುನರುತ್ಥಾನ ದಿನದಂದು ಅಲ್ಲಾಹು ಅವರ ನಡುವೆ ತೀರ್ಪು ನೀಡುವನು.

وَقَالَتِ ٱلۡيَهُودُ لَيۡسَتِ ٱلنَّصَٰرَىٰ عَلَىٰ شَيۡءٖ وَقَالَتِ ٱلنَّصَٰرَىٰ لَيۡسَتِ ٱلۡيَهُودُ عَلَىٰ شَيۡءٖ وَهُمۡ يَتۡلُونَ ٱلۡكِتَٰبَۗ كَذَٰلِكَ قَالَ ٱلَّذِينَ لَا يَعۡلَمُونَ مِثۡلَ قَوۡلِهِمۡۚ فَٱللَّهُ يَحۡكُمُ بَيۡنَهُمۡ يَوۡمَ ٱلۡقِيَٰمَةِ فِيمَا كَانُواْ فِيهِ يَخۡتَلِفُونَ ١١٣

---

114. ಅಲ್ಲಾಹನ ಮಸೀದಿಗಳಲ್ಲಿ ಅವನ ಹೆಸರನ್ನು ಸ್ಮರಿಸುವುದನ್ನು ತಡೆಯುವವನಿಗಿಂತ ಮತ್ತು ಅವುಗಳ (ಮಸೀದಿಗಳ) ನಾಶಕ್ಕಾಗಿ ಪರಿಶ್ರಮಿಸುವವನಿಗಿಂತ ದೊಡ್ಡ ಅಕ್ರಮಿ ಯಾರು? ಅವರು ಭಯಪಡುವವರಾಗಿಯೇ ಹೊರತು ಅವುಗಳನ್ನು ಪ್ರವೇಶಿಸ-ಬಾರದಿತ್ತು. ಅವರಿಗೆ ಇಹಲೋಕದಲ್ಲಿ ಅಪಮಾನವಿದೆ ಮತ್ತು ಪರಲೋಕದಲ್ಲಿ ಕಠೋರ ಶಿಕ್ಷೆಯಿದೆ.

وَمَنۡ أَظۡلَمُ مِمَّن مَّنَعَ مَسَٰجِدَ ٱللَّهِ أَن يُذۡكَرَ فِيهَا ٱسۡمُهُۥ وَسَعَىٰ فِي خَرَابِهَآۚ أُوْلَٰٓئِكَ مَا كَانَ لَهُمۡ أَن يَدۡخُلُوهَآ إِلَّا خَآئِفِينَۚ لَهُمۡ فِي ٱلدُّنۡيَا خِزۡيٞ وَلَهُمۡ فِي ٱلۡأٓخِرَةِ عَذَابٌ عَظِيمٞ ١١٤

---

115. ಪೂರ್ವ ಮತ್ತು ಪಶ್ಚಿಮವು ಅಲ್ಲಾಹನಿಗೆ ಸೇರಿದ್ದು. ನೀವು ಯಾವ ದಿಕ್ಕಿಗೆ ತಿರುಗಿದರೂ ಅಲ್ಲಿ ಅಲ್ಲಾಹನ ಮುಖವಿದೆ.

وَلِلَّهِ ٱلۡمَشۡرِقُ وَٱلۡمَغۡرِبُۚ فَأَيۡنَمَا تُوَلُّواْ فَثَمَّ وَجۡهُ ٱللَّهِۚ إِنَّ ٱللَّهَ وَٰسِعٌ عَلِيمٞ ١١٥

ನಿಶ್ಚಯವಾಗಿಯೂ ಅಲ್ಲಾಹು ಅತ್ಯಂತ ವಿಶಾಲನು ಮತ್ತು ಸರ್ವಜ್ಞನಾಗಿದ್ದಾನೆ.

---

116. ಅಲ್ಲಾಹನಿಗೆ ಮಕ್ಕಳಿದ್ದಾರೆ ಎಂದು ಅವರು ಹೇಳುತ್ತಾರೆ. (ಇಲ್ಲ, ಬದಲಿಗೆ) ಅವನು ಪರಿಶುದ್ಧನು! ಭೂಮ್ಯಾಕಾಶಗಳ-ಲ್ಲಿರುವ ಎಲ್ಲಾ ಸೃಷ್ಟಿಗಳೂ ಅವನಿಗೆ ಸೇರಿದ್ದು. ಎಲ್ಲವೂ ಅವನಿಗೆ ವಿಧೇಯವಾಗಿವೆ.

وَقَالُواْ ٱتَّخَذَ ٱللَّهُ وَلَدٗاۗ سُبۡحَٰنَهُۥۖ بَل لَّهُۥ مَا فِي
ٱلسَّمَٰوَٰتِ وَٱلۡأَرۡضِۖ كُلّٞ لَّهُۥ قَٰنِتُونَ ١١٦

---

117. ಅವನು ಯಾವುದೇ ಪೂರ್ವ ಮಾದರಿಯಿಲ್ಲದೆ ಭೂಮ್ಯಾ-ಕಾಶಗಳನ್ನು ಸೃಷ್ಟಿಸಿದವನು. ಅವನು ಒಂದು ವಿಷಯವನ್ನು ತೀರ್ಮಾನಿಸಿದರೆ, ಅದಕ್ಕೆ ಉಂಟಾಗು ಎಂದು ಹೇಳುವನು; ಆಗ ಅದು ಉಂಟಾಗುವುದು.

بَدِيعُ ٱلسَّمَٰوَٰتِ وَٱلۡأَرۡضِۖ وَإِذَا قَضَىٰٓ أَمۡرٗا فَإِنَّمَا
يَقُولُ لَهُۥ كُن فَيَكُونُ ١١٧

---

118. ಜ್ಞಾನವಿಲ್ಲದವರು ಹೇಳುತ್ತಾರೆ: "ಅಲ್ಲಾಹನೇಕೆ ನಮ್ಮೊಡನೆ ಮಾತನಾಡುವುದಿಲ್ಲ? ಅಥವಾ ನಮ್ಮ ಬಳಿಗೆ ಒಂದು ದೃಷ್ಟಾಂತವೇಕೆ ಬರುವುದಿಲ್ಲ?" ಇವರು ಹೇಳಿದಂತೆಯೇ ಇವರಿಗಿಂತ ಮೊದಲಿನವರೂ ಹೇಳಿದ್ದರು. ಇವರ ಮತ್ತು ಅವರ ಹೃದಯಗಳು ಸಮಾನವಾಗಿವೆ. ದೃಢವಿಶ್ವಾಸವಿಡುವ ಜನರಿಗೆ ನಾವು ದೃಷ್ಟಾಂತಗಳನ್ನು ವಿವರಿಸಿಕೊಟ್ಟಿದ್ದೇವೆ.

وَقَالَ ٱلَّذِينَ لَا يَعۡلَمُونَ لَوۡلَا يُكَلِّمُنَا ٱللَّهُ أَوۡ
تَأۡتِينَآ ءَايَةٞۗ كَذَٰلِكَ قَالَ ٱلَّذِينَ مِن قَبۡلِهِم مِّثۡلَ
قَوۡلِهِمۡۘ تَشَٰبَهَتۡ قُلُوبُهُمۡۗ قَدۡ بَيَّنَّا ٱلۡأٓيَٰتِ لِقَوۡمٖ
يُوقِنُونَ ١١٨

---

119. ನಿಶ್ಚಯವಾಗಿಯೂ ನಾವು ನಿಮ್ಮನ್ನು ಸುವಾರ್ತೆ ನೀಡುವವರಾಗಿ ಮತ್ತು ಮುನ್ನೆಚ್ಚರಿಕೆ ನೀಡುವವರಾಗಿ ಸತ್ಯದೊಂದಿಗೆ ಕಳುಹಿಸಿದ್ದೇವೆ. ನರಕವಾಸಿಗಳ ಕುರಿತು ನಿಮ್ಮೊಂದಿಗೆ ಪ್ರಶ್ನಿಸಲಾಗುವುದಿಲ್ಲ.

إِنَّآ أَرۡسَلۡنَٰكَ بِٱلۡحَقِّ بَشِيرٗا وَنَذِيرٗاۖ وَلَا تُسۡـَٔلُ
عَنۡ أَصۡحَٰبِ ٱلۡجَحِيمِ ١١٩

---

120. ನೀವು ಅವರ ಮಾರ್ಗವನ್ನು ಅನುಸರಿಸುವ ತನಕ ಯಹೂದಿಗಳು ಮತ್ತು ಕ್ರೈಸ್ತರು ನಿಮ್ಮ ಬಗ್ಗೆ ಸಂಪ್ರೀತರಾಗುವುದೇ ಇಲ್ಲ. ಹೇಳಿರಿ: "ಅಲ್ಲಾಹನ ಮಾರ್ಗದರ್ಶನವೇ ನಿಜವಾದ ಮಾರ್ಗದರ್ಶನ." ನಿಮ್ಮ ಬಳಿಗೆ ಜ್ಞಾನವು ಬಂದ ಬಳಿಕವೂ ನೀವು ಅವರ ಸ್ವೇಚ್ಛೆಗಳನ್ನು ಹಿಂಬಾಲಿಸಿದರೆ, ಅಲ್ಲಾಹನಿಂದ ನಿಮ್ಮನ್ನು ರಕ್ಷಿಸುವ ಯಾವುದೇ ರಕ್ಷಕರು ಅಥವಾ ಸಹಾಯಕರು ಇರಲಾರರು.

وَلَن تَرۡضَىٰ عَنكَ ٱلۡيَهُودُ وَلَا ٱلنَّصَٰرَىٰ حَتَّىٰ
تَتَّبِعَ مِلَّتَهُمۡۗ قُلۡ إِنَّ هُدَى ٱللَّهِ هُوَ ٱلۡهُدَىٰۗ
وَلَئِنِ ٱتَّبَعۡتَ أَهۡوَآءَهُم بَعۡدَ ٱلَّذِي جَآءَكَ مِنَ
ٱلۡعِلۡمِ مَا لَكَ مِنَ ٱللَّهِ مِن وَلِيّٖ وَلَا نَصِيرٍ ١٢٠

---

121. ನಾವು ಯಾರಿಗೆ ಗ್ರಂಥವನ್ನು ನೀಡಿದ್ದೇವೆಯೋ ಅವರು ಅದನ್ನು ಪಠಿಸಬೇಕಾದ ರೀತಿಯಲ್ಲೇ ಪಠಿಸುತ್ತಾರೆ. ಅವರು ಅದರಲ್ಲಿ ವಿಶ್ವಾಸವಿಡುತ್ತಾರೆ. ಯಾರು ಅದರಲ್ಲಿ ವಿಶ್ವಾಸವಿಡುವುದಿಲ್ಲವೋ ಅವರೇ ನಷ್ಟ ಹೊಂದಿದವರು.

ٱلَّذِينَ ءَاتَيۡنَٰهُمُ ٱلۡكِتَٰبَ يَتۡلُونَهُۥ حَقَّ
تِلَاوَتِهِۦٓ أُوْلَٰٓئِكَ يُؤۡمِنُونَ بِهِۦۗ وَمَن يَكۡفُرۡ
بِهِۦ فَأُوْلَٰٓئِكَ هُمُ ٱلۡخَٰسِرُونَ ١٢١

---

122. ಓ ಇಸ್ರಾಯೇಲ್ ಮಕ್ಕಳೇ! ನಾನು ನಿಮಗೆ ಅನುಗ್ರಹಿಸಿದ ನನ್ನ

يَٰبَنِيٓ إِسۡرَٰٓءِيلَ ٱذۡكُرُواْ نِعۡمَتِيَ ٱلَّتِيٓ أَنۡعَمۡتُ

ಅನುಗ್ರಹವನ್ನು ಮತ್ತು ನಾನು ನಿಮ್ಮನ್ನು ಸರ್ವಲೋಕದವರಿಗಿಂತ (ಎಲ್ಲಾ ಮನುಷ್ಯರಿಗಿಂತ) ಶ್ರೇಷ್ಠಗೊಳಿಸಿರುವುದನ್ನು ಸ್ಮರಿಸಿರಿ.

عَلَيۡكُمۡ وَأَنِّي فَضَّلۡتُكُمۡ عَلَى ٱلۡعَٰلَمِينَ ١٢٢

---

123. ಒಬ್ಬ ವ್ಯಕ್ತಿ ಇನ್ನೊಬ್ಬ ವ್ಯಕ್ತಿಗೆ ಯಾವುದೇ ಉಪಕಾರ ಮಾಡದ, ಅವನಿಂದ ಯಾವುದೇ ದಂಡ ಸ್ವೀಕರಿಸದ, ಅವನಿಗೆ ಯಾವುದೇ ಶಿಫಾರಸು ಪ್ರಯೋಜನಪಡದ ಮತ್ತು ಅವರಿಗೆ ಯಾವುದೇ ಸಹಾಯವು ದೊರೆಯದ ಒಂದು ದಿನವನ್ನು ಭಯಪಡಿರಿ.

وَٱتَّقُواْ يَوۡمٗا لَّا تَجۡزِي نَفۡسٌ عَن نَّفۡسٖ شَيۡـٔٗا وَلَا يُقۡبَلُ مِنۡهَا عَدۡلٞ وَلَا تَنفَعُهَا شَفَٰعَةٞ وَلَا هُمۡ يُنصَرُونَ ١٢٣

---

124. ಇಬ್ರಾಹೀಮರನ್ನು ಅವರ ಪರಿಪಾಲಕನು (ಅಲ್ಲಾಹು) ಕೆಲವು ವಚನಗಳ ಮೂಲಕ ಪರೀಕ್ಷಿಸಿದ ಸಂದರ್ಭ(ವನ್ನು ಸ್ಮರಿಸಿ). ಅವರು ಅವೆಲ್ಲವನ್ನೂ ಪೂರ್ಣಗೊಳಿಸಿದರು. ಅಲ್ಲಾಹು ಹೇಳಿದನು: "ನಾನು ನಿಮ್ಮನ್ನು ಜನರಿಗೆ ಮುಖಂಡನನ್ನಾಗಿ ಮಾಡುತ್ತೇನೆ." ಅವರು ಹೇಳಿದರು: "ನನ್ನ ಸಂತಾನದಲ್ಲಿಯೂ ಮಾಡು." ಅಲ್ಲಾಹು ಹೇಳಿದನು: "ನನ್ನ ವಾಗ್ದಾನವು ಅಕ್ರಮಿಗಳಿಗೆ ಅನ್ವಯವಾಗುವುದಿಲ್ಲ."

۞وَإِذِ ٱبۡتَلَىٰٓ إِبۡرَٰهِـۧمَ رَبُّهُۥ بِكَلِمَٰتٖ فَأَتَمَّهُنَّۖ قَالَ إِنِّي جَاعِلُكَ لِلنَّاسِ إِمَامٗاۖ قَالَ وَمِن ذُرِّيَّتِيۖ قَالَ لَا يَنَالُ عَهۡدِي ٱلظَّٰلِمِينَ ١٢٤

---

125. ನಾವು ಆ ಭವನವನ್ನು (ಕಅಬಾಲಯವನ್ನು) ಜನರಿಗೆ ಪುಣ್ಯಸ್ಥಳವಾಗಿ ಮತ್ತು ನಿರ್ಭಯ ಸ್ಥಳವಾಗಿ ಮಾಡಿದ ಸಂದರ್ಭ. ಇಬ್ರಾಹೀಮರು ನಿಂತ ಸ್ಥಳವನ್ನು ನಮಾಝಿನ ಸ್ಥಳವಾಗಿ ಮಾಡಿಕೊಳ್ಳಿರಿ. "ಪ್ರದಕ್ಷಿಣೆ ಮಾಡುವವರಿಗೆ, ಧ್ಯಾನ ಮಗ್ನರಾಗಿ ಕೂರುವವರಿಗೆ, ತಲೆಬಾಗುವವರಿಗೆ ಮತ್ತು ಸಾಷ್ಟಾಂಗ ಮಾಡುವವರಿಗೆ ನನ್ನ ಭವನವನ್ನು ಶುದ್ಧೀಕರಿಸಿರಿ" ಎಂದು ನಾವು ಇಬ್ರಾಹೀಮ್ ಮತ್ತು ಇಸ್ಮಾಈಲರಿಗೆ ಆದೇಶಿಸಿದೆವು.

وَإِذۡ جَعَلۡنَا ٱلۡبَيۡتَ مَثَابَةٗ لِّلنَّاسِ وَأَمۡنٗا وَٱتَّخِذُواْ مِن مَّقَامِ إِبۡرَٰهِـۧمَ مُصَلّٗىۖ وَعَهِدۡنَآ إِلَىٰٓ إِبۡرَٰهِـۧمَ وَإِسۡمَٰعِيلَ أَن طَهِّرَا بَيۡتِيَ لِلطَّآئِفِينَ وَٱلۡعَٰكِفِينَ وَٱلرُّكَّعِ ٱلسُّجُودِ ١٢٥

---

126. ಇಬ್ರಾಹೀಮ್ ಹೇಳಿದ ಸಂದರ್ಭ(ವನ್ನು ಸ್ಮರಿಸಿ): "ಓ ನನ್ನ ಪರಿಪಾಲಕನೇ! ನೀನು ಇದನ್ನು ಸುರಕ್ಷಿತ ನಗರವನ್ನಾಗಿ ಮಾಡು ಮತ್ತು ಇದರ ನಿವಾಸಿಗಳಿಗೆ—ಅವರ ಪೈಕಿ ಅಲ್ಲಾಹನಲ್ಲಿ ಮತ್ತು ಅಂತ್ಯ ದಿನದಲ್ಲಿ ವಿಶ್ವಾಸವಿಡುವವರಿಗೆ—ಹಣ್ಣು-ಹಂಪಲುಗಳ ಆಹಾರವನ್ನು ನೀಡು." ಅಲ್ಲಾಹು ಹೇಳಿದನು: "ನಾನು ಸತ್ಯನಿಷೇಧಿಗಳಿಗೂ ಅಲ್ಪಕಾಲದ ಸವಲತ್ತುಗಳನ್ನು ನೀಡುವೆನು. ನಂತರ ನರಕ ಶಿಕ್ಷೆಗೆ ಅವರನ್ನು ನಿರ್ಬಂಧಿಸುವೆನು." ಆ ಗಮ್ಯಸ್ಥಾನವು ಬಹಳ ನಿಕೃಷ್ಟವಾಗಿದೆ.

وَإِذۡ قَالَ إِبۡرَٰهِـۧمُ رَبِّ ٱجۡعَلۡ هَٰذَا بَلَدًا ءَامِنٗا وَٱرۡزُقۡ أَهۡلَهُۥ مِنَ ٱلثَّمَرَٰتِ مَنۡ ءَامَنَ مِنۡهُم بِٱللَّهِ وَٱلۡيَوۡمِ ٱلۡأٓخِرِۚ قَالَ وَمَن كَفَرَ فَأُمَتِّعُهُۥ قَلِيلٗا ثُمَّ أَضۡطَرُّهُۥٓ إِلَىٰ عَذَابِ ٱلنَّارِۖ وَبِئۡسَ ٱلۡمَصِيرُ ١٢٦

---

127. ಇಬ್ರಾಹೀಮ್ ಮತ್ತು ಇಸ್ಮಾಈಲರು ಕಅಬಾಲಯದ ಅಡಿಪಾಯ ಮತ್ತು ಗೋಡೆಗಳನ್ನು ಎತ್ತರಿಸುತ್ತಿದ್ದ ಸಂದರ್ಭ. (ಅವರು ಹೇಳಿದರು): "ಓ ನಮ್ಮ ಪರಿಪಾಲಕನೇ! ನಮ್ಮಿಂದ ಇದನ್ನು ಸ್ವೀಕರಿಸು. ನಿಶ್ಚಯವಾಗಿಯೂ ನೀನು ಎಲ್ಲವನ್ನೂ ಕೇಳುವವನು

وَإِذۡ يَرۡفَعُ إِبۡرَٰهِـۧمُ ٱلۡقَوَاعِدَ مِنَ ٱلۡبَيۡتِ وَإِسۡمَٰعِيلُ رَبَّنَا تَقَبَّلۡ مِنَّآۖ إِنَّكَ أَنتَ ٱلسَّمِيعُ ٱلۡعَلِيمُ ١٢٧

ಮತ್ತು ಎಲ್ಲವನ್ನೂ ತಿಳಿದವನಾಗಿರುವೆ.

---

**128.** ಓ ನಮ್ಮ ಪರಿಪಾಲಕನೇ! ನಮ್ಮಿಬ್ಬರನ್ನೂ ನಿನ್ನ ಆಜ್ಞಾಪಾಲಕರ-ನ್ನಾಗಿ ಮಾಡು ಮತ್ತು ನಮ್ಮ ಸಂತಾನದಿಂದಲೂ ನಿನಗೆ ಶರಣಾದ ಒಂದು ಸಮುದಾಯವನ್ನು ಉಂಟುಮಾಡು. ನಮಗೆ ನಮ್ಮ ಆರಾಧನಾ ಕ್ರಮಗಳನ್ನು ಕಲಿಸಿಕೊಡು ಮತ್ತು ನಮ್ಮ ಪಶ್ಚಾ-ತ್ತಾಪವನ್ನು ಸ್ವೀಕರಿಸು. ನಿಶ್ಚಯವಾಗಿಯೂ ನೀನು ಪಶ್ಚಾತ್ತಾಪ ಸ್ವೀಕರಿಸುವವನು ಮತ್ತು ಕರುಣೆ ತೋರುವವನಾಗಿರುವೆ.

رَبَّنَا وَٱجۡعَلۡنَا مُسۡلِمَيۡنِ لَكَ وَمِن ذُرِّيَّتِنَآ أُمَّةٗ مُّسۡلِمَةٗ لَّكَ وَأَرِنَا مَنَاسِكَنَا وَتُبۡ عَلَيۡنَآۖ إِنَّكَ أَنتَ ٱلتَّوَّابُ ٱلرَّحِيمُ ١٢٨

---

**129.** ಓ ನಮ್ಮ ಪರಿಪಾಲಕನೇ! ನಿನ್ನ ದೃಷ್ಟಾಂತಗಳನ್ನು ಪಠಿಸುವ, ಗ್ರಂಥವನ್ನು ಹಾಗೂ ವಿವೇಕವನ್ನು ಕಲಿಸಿಕೊಡುವ ಮತ್ತು ಅವರನ್ನು ಶುದ್ಧೀಕರಿಸುವ ಒಬ್ಬ ಸಂದೇಶವಾಹಕರನ್ನು ಅವರಿಂದಲೇ ಅವರಿಗೆ ಕಳುಹಿಸು.[1] ನಿಶ್ಚಯವಾಗಿಯೂ ನೀನು ಪ್ರಬಲನು ಮತ್ತು ವಿವೇಕಪೂರ್ಣನಾಗಿರುವೆ."

رَبَّنَا وَٱبۡعَثۡ فِيهِمۡ رَسُولٗا مِّنۡهُمۡ يَتۡلُواْ عَلَيۡهِمۡ ءَايَٰتِكَ وَيُعَلِّمُهُمُ ٱلۡكِتَٰبَ وَٱلۡحِكۡمَةَ وَيُزَكِّيهِمۡۖ إِنَّكَ أَنتَ ٱلۡعَزِيزُ ٱلۡحَكِيمُ ١٢٩

---

**130.** ಸ್ವಯಂ ಅವಿವೇಕಿಯಾಗಿರುವವನ ಹೊರತು ಇನ್ನಾರೂ ಇಬ್ರಾಹೀಮರ ಮಾರ್ಗದಿಂದ ವಿಮುಖರಾಗುವುದಿಲ್ಲ. ಇಹಲೋಕದಲ್ಲಿ ನಾವು ಅವರನ್ನು (ಇಬ್ರಾಹೀಮರನ್ನು) ವಿಶೇಷವಾಗಿ ಆರಿಸಿದ್ದೇವೆ. ಪರಲೋಕದಲ್ಲಿ ಅವರು ನೀತಿವಂತರಲ್ಲಿ ಸೇರಿರುತ್ತಾರೆ.

وَمَن يَرۡغَبُ عَن مِّلَّةِ إِبۡرَٰهِـۧمَ إِلَّا مَن سَفِهَ نَفۡسَهُۥۚ وَلَقَدِ ٱصۡطَفَيۡنَٰهُ فِي ٱلدُّنۡيَاۖ وَإِنَّهُۥ فِي ٱلۡأٓخِرَةِ لَمِنَ ٱلصَّٰلِحِينَ ١٣٠

---

**131.** ಅವರೊಡನೆ ಅವರ ಪರಿಪಾಲಕನು (ಅಲ್ಲಾಹು) "ಶರಣಾಗು" ಎಂದಾಗ, ಅವರು ಹೇಳಿದರು: "ಸರ್ವಲೋಕಗಳ ಪರಿಪಾಲಕನಿಗೆ (ಅಲ್ಲಾಹನಿಗೆ) ನಾನು ಸಂಪೂರ್ಣ ಶರಣಾಗಿದ್ದೇನೆ."

إِذۡ قَالَ لَهُۥ رَبُّهُۥٓ أَسۡلِمۡۖ قَالَ أَسۡلَمۡتُ لِرَبِّ ٱلۡعَٰلَمِينَ ١٣١

---

**132.** ಇಬ್ರಾಹೀಮ್ ಮತ್ತು ಯಾಕೂಬರು ತಮ್ಮ ಸಂತಾನಕ್ಕೆ ಅದನ್ನೇ ಉಪದೇಶಿಸುತ್ತಾ ಹೇಳಿದರು: "ಓ ನನ್ನ ಮಕ್ಕಳೇ! ನಿಶ್ಚಯವಾಗಿಯೂ ಅಲ್ಲಾಹು ಈ ಧರ್ಮವನ್ನು ನಿಮಗೆ ವಿಶೇಷವಾಗಿ ಆರಿಸಿದ್ದಾನೆ. ಆದ್ದರಿಂದ ನೀವು ಮುಸ್ಲಿಮರಾಗಿಯೇ ಹೊರತು ಇಹಲೋಕ ತ್ಯಜಿಸಬೇಡಿ."

وَوَصَّىٰ بِهَآ إِبۡرَٰهِـۧمُ بَنِيهِ وَيَعۡقُوبُ يَٰبَنِيَّ إِنَّ ٱللَّهَ ٱصۡطَفَىٰ لَكُمُ ٱلدِّينَ فَلَا تَمُوتُنَّ إِلَّا وَأَنتُم مُّسۡلِمُونَ ١٣٢

---

**133.** ಯಾಕೂಬರ ಮರಣದ ಸಮಯದಲ್ಲಿ ನೀವು ಅಲ್ಲಿ ಉಪಸ್ಥಿ-ತರಿದ್ದಿರಾ? ಅವರು ತಮ್ಮ ಮಕ್ಕಳೊಡನೆ, "ನನ್ನ ಬಳಿಕ ನೀವು

أَمۡ كُنتُمۡ شُهَدَآءَ إِذۡ حَضَرَ يَعۡقُوبَ ٱلۡمَوۡتُ إِذۡ قَالَ لِبَنِيهِ مَا تَعۡبُدُونَ مِنۢ بَعۡدِيۖ قَالُواْ

---

[1] ಇಬ್ರಾಹೀಮ್ ಮತ್ತು ಇಸ್ಮಾಈಲ್ (ಅವರಿಬ್ಬರ ಮೇಲೆ ಶಾಂತಿಯಿರಲಿ) ಪ್ರಾರ್ಥಿಸಿದ ಈ ಪ್ರಾರ್ಥನೆಯನ್ನು ಸ್ವೀಕರಿಸಿ ಸರ್ವಶಕ್ತನಾದ ಅಲ್ಲಾಹು ಪ್ರವಾದಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರನ್ನು ಪ್ರವಾದಿಯಾಗಿ ಕಳುಹಿಸಿದನು. "ನಾನು ನನ್ನ ತಂದೆ ಇಬ್ರಾಹೀಮರ ಪ್ರಾರ್ಥನೆಯ ಫಲವಾಗಿದ್ದೇನೆ" ಎಂದು ಪ್ರವಾದಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳುತ್ತಿದ್ದುದು ಈ ಕಾರಣದಿಂದಾಗಿದೆ.

نَعۡبُدُ إِلَٰهَكَ وَإِلَٰهَ ءَابَآئِكَ إِبۡرَٰهِـۧمَ وَإِسۡمَٰعِيلَ وَإِسۡحَٰقَ إِلَٰهٗا وَٰحِدٗا وَنَحۡنُ لَهُۥ مُسۡلِمُونَ ١٣٣

ಯಾರನ್ನು ಆರಾಧಿಸುತ್ತೀರಿ?" ಎಂದು ಕೇಳಿದ ಸಂದರ್ಭ. ಮಕ್ಕಳು ಹೇಳಿದರು: "ನಾವು ನಿಮ್ಮ ದೇವನು ಮತ್ತು ನಿಮ್ಮ ಪೂರ್ವಜರಾದ ಇಬ್ರಾಹೀಮ್, ಇಸ್ಮಾಈಲ್ ಹಾಗೂ ಇಸ್‌ಹಾಕರ ದೇವನಾದ ಏಕೈಕ ದೇವನನ್ನು ಆರಾಧಿಸುತ್ತೇವೆ. ನಾವು ಅವನಿಗೆ ಶರಣಾಗಿ ಬದುಕುತ್ತೇವೆ."

---

تِلۡكَ أُمَّةٞ قَدۡ خَلَتۡۖ لَهَا مَا كَسَبَتۡ وَلَكُم مَّا كَسَبۡتُمۡۖ وَلَا تُسۡـَٔلُونَ عَمَّا كَانُواْ يَعۡمَلُونَ ١٣٤

134. ಆ ಸಮುದಾಯವು ಕಳೆದುಹೋಗಿದೆ. ಅವರು ಮಾಡಿದ್ದು ಅವರಿಗೆ ಮತ್ತು ನೀವು ಮಾಡಿದ್ದು ನಿಮಗೆ. ಅವರು ಮಾಡಿದ ಕರ್ಮಗಳ ಬಗ್ಗೆ ನಿಮ್ಮೊಂದಿಗೆ ಪ್ರಶ್ನಿಸಲಾಗುವುದಿಲ್ಲ.

---

وَقَالُواْ كُونُواْ هُودًا أَوۡ نَصَٰرَىٰ تَهۡتَدُواْۗ قُلۡ بَلۡ مِلَّةَ إِبۡرَٰهِـۧمَ حَنِيفٗاۖ وَمَا كَانَ مِنَ ٱلۡمُشۡرِكِينَ ١٣٥

135. ಅವರು ಹೇಳಿದರು: "ನೀವು ಯಹೂದಿಗಳು ಅಥವಾ ಕ್ರೈಸ್ತರಾಗಿರಿ; ನೀವು ಸನ್ಮಾರ್ಗ ಪಡೆಯುವಿರಿ." ಹೇಳಿರಿ: "ಅಲ್ಲ; (ವಾಸ್ತವವಾಗಿ ಸನ್ಮಾರ್ಗದಲ್ಲಿರುವವರು) ಇಬ್ರಾಹೀಮರ ಮಾರ್ಗವನ್ನು ಹಿಂಬಾಲಿಸುವವರು. ಅವರು (ಇಬ್ರಾಹೀಮ್) ಏಕನಿಷ್ಠರಾಗಿದ್ದರು.[1] ಅವರು ಬಹುದೇವಾರಾಧಕರಲ್ಲಿ ಸೇರಿದವರಾಗಿರಲಿಲ್ಲ."

---

قُولُوٓاْ ءَامَنَّا بِٱللَّهِ وَمَآ أُنزِلَ إِلَيۡنَا وَمَآ أُنزِلَ إِلَىٰٓ إِبۡرَٰهِـۧمَ وَإِسۡمَٰعِيلَ وَإِسۡحَٰقَ وَيَعۡقُوبَ وَٱلۡأَسۡبَاطِ وَمَآ أُوتِيَ مُوسَىٰ وَعِيسَىٰ وَمَآ أُوتِيَ ٱلنَّبِيُّونَ مِن رَّبِّهِمۡ لَا نُفَرِّقُ بَيۡنَ أَحَدٖ مِّنۡهُمۡ وَنَحۡنُ لَهُۥ مُسۡلِمُونَ ١٣٦

136. ಹೇಳಿರಿ: "ನಾವು ಅಲ್ಲಾಹನಲ್ಲಿ, ನಮಗೆ ಅವತೀರ್ಣವಾಗಿರುವುದರಲ್ಲಿ, ಇಬ್ರಾಹೀಮರಿಗೆ, ಇಸ್ಮಾಈಲರಿಗೆ, ಇಸ್‌ಹಾಕರಿಗೆ, ಯಾಕೂಬರಿಗೆ ಮತ್ತು ಯಾಕೂಬರ ಸಂತಾನಕ್ಕೆ ಅವತೀರ್ಣವಾಗಿರುವುದರಲ್ಲಿ, ಮೂಸಾ ಮತ್ತು ಈಸಾರಿಗೆ ನೀಡಲಾಗಿರುವುದರಲ್ಲಿ, ಎಲ್ಲಾ ಪ್ರವಾದಿಗಳಿಗೂ ಅವರ ಪರಿಪಾಲಕನ (ಅಲ್ಲಾಹನ) ಕಡೆಯಿಂದ ನೀಡಲಾಗಿರುವುದರಲ್ಲಿ ವಿಶ್ವಾಸವಿಟ್ಟಿದ್ದೇವೆ. ಅವರಲ್ಲಿ ಯಾರ ನಡುವೆಯೂ ನಾವು ಬೇಧ ಮಾಡುವುದಿಲ್ಲ. ನಾವು ಅವನಿಗೆ ಶರಣಾಗಿ ಬದುಕುತ್ತೇವೆ."

---

فَإِنۡ ءَامَنُواْ بِمِثۡلِ مَآ ءَامَنتُم بِهِۦ فَقَدِ ٱهۡتَدَواْۖ وَّإِن تَوَلَّوۡاْ فَإِنَّمَا هُمۡ فِي شِقَاقٖۖ فَسَيَكۡفِيكَهُمُ ٱللَّهُۚ وَهُوَ ٱلسَّمِيعُ ٱلۡعَلِيمُ ١٣٧

137. ನೀವು ವಿಶ್ವಾಸವಿಟ್ಟಂತೆಯೇ ಅವರೂ ವಿಶ್ವಾಸವಿಟ್ಟರೆ ಅವರು ಸನ್ಮಾರ್ಗ ಪಡೆಯುವರು. ಆದರೆ ಅವರು ವಿಮುಖರಾಗುವುದಾದರೆ ಅವರು ಸ್ಪಷ್ಟ ಭಿನ್ನಮತದಲ್ಲಿದ್ದಾರೆ. ಅವರ ವಿರುದ್ಧ ನಿಮಗೆ ಅಲ್ಲಾಹು ಸಾಕಾಗುವನು. ಅವನು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.[2]

---

[1] ಏಕನಿಷ್ಠ ಎಂದರೆ ಒಬ್ಬನೇ ದೇವನ ಆರಾಧಕ ಮತ್ತು ಇತರೆಲ್ಲಾ ದೇವರುಗಳನ್ನು ಬಿಟ್ಟು ಏಕೈಕ ದೇವನನ್ನು ಮಾತ್ರ ಆರಾಧಿಸುವವನು.

[2] ಅಂದರೆ ನೀವು ವಿಶ್ವಾಸವಿಟ್ಟಂತೆ ವಿಶ್ವಾಸವಿಡದೆ ಅವರು ನಿಮ್ಮ ವಿರುದ್ಧ ಕುತಂತ್ರಗಳನ್ನು ಮುಂದುವರಿಸಿದರೆ ನೀವೇನೂ ಹೆದರಬೇಕಾಗಿಲ್ಲ. ಏಕೆಂದರೆ, ಅಲ್ಲಾಹು ನಿಮ್ಮ ಜೊತೆಗಿದ್ದಾನೆ. ಅವನು ನಿಮ್ಮನ್ನು ಅವರ ಕುತಂತ್ರಗಳಿಂದ ರಕ್ಷಿಸುತ್ತಾನೆ. ಈ ಭವಿಷ್ಯವು ಕೆಲವೇ ವರ್ಷಗಳಲ್ಲಿ ನೆರವೇರಿತು. ಯಹೂದಿಗಳ ಬನೂ ಕೈನುಕಾ ಮತ್ತು ಬನೂ ನದೀರ್ ಗೋತ್ರಗಳನ್ನು ಗಡೀಪಾರು ಮಾಡಲಾಯಿತು ಮತ್ತು ಬನೂ ಕುರೈಝ ಗೋತ್ರವನ್ನು ಸಂಹಾರ ಮಾಡಲಾಯಿತು.

138. ಅಲ್ಲಾಹನ ಬಣ್ಣವನ್ನು ಸ್ವೀಕರಿಸಿರಿ.[1] ಅಲ್ಲಾಹನಿಗಿಂತಲೂ ಉತ್ತಮ ಬಣ್ಣವನ್ನು ನೀಡುವವನು ಯಾರು? ನಾವಂತೂ ಅವನನ್ನು ಮಾತ್ರ ಆರಾಧಿಸುತ್ತೇವೆ.

صِبۡغَةَ ٱللَّهِ وَمَنۡ أَحۡسَنُ مِنَ ٱللَّهِ صِبۡغَةٗۖ وَنَحۡنُ لَهُۥ عَٰبِدُونَ ١٣٨

139. (ಓ ಪ್ರವಾದಿಯವರೇ!) ಹೇಳಿರಿ: “ನೀವು ನಮ್ಮ ಮತ್ತು ನಿಮ್ಮ ಪರಿಪಾಲಕನಾದ ಅಲ್ಲಾಹನ ವಿಷಯದಲ್ಲಿ ನಮ್ಮೊಡನೆ ತರ್ಕಿಸುತ್ತೀರಾ? ನಮ್ಮ ಕರ್ಮಗಳು ನಮಗೆ ಮತ್ತು ನಿಮ್ಮ ಕರ್ಮಗಳು ನಿಮಗೆ. ನಾವಂತೂ ಅವನಿಗೆ ಸಂಪೂರ್ಣ ನಿಷ್ಕಳಂಕರಾಗಿದ್ದೇವೆ.”

قُلۡ أَتُحَآجُّونَنَا فِي ٱللَّهِ وَهُوَ رَبُّنَا وَرَبُّكُمۡ وَلَنَآ أَعۡمَٰلُنَا وَلَكُمۡ أَعۡمَٰلُكُمۡ وَنَحۡنُ لَهُۥ مُخۡلِصُونَ ١٣٩

140. ಇಬ್ರಾಹೀಮ್, ಇಸ್ಮಾಈಲ್, ಇಸ್‌ಹಾಕ್, ಯಾಕೂಬ್ ಮತ್ತು ಯಾಕೂಬರ ಸಂತಾನಗಳು ಯಹೂದಿಗಳು ಅಥವಾ ಕ್ರೈಸ್ತರಾಗಿದ್ದರೆಂದು ನೀವು ಹೇಳುತ್ತೀರಾ? ಹೇಳಿರಿ: “ಹೆಚ್ಚು ತಿಳಿದವರು ನೀವೋ ಅಥವಾ ಅಲ್ಲಾಹನೋ?” ಅಲ್ಲಾಹನ ಬಳಿ ಸಾಕ್ಷಿಯನ್ನು ಅಡಗಿಸುವವನಿಗಿಂತಲೂ ದೊಡ್ಡ ಅಕ್ರಮಿ ಯಾರು? ನೀವು ಮಾಡುತ್ತಿರುವ ಕರ್ಮಗಳ ಕುರಿತು ಅಲ್ಲಾಹು ತಿಳಿಯದವನಲ್ಲ.

أَمۡ تَقُولُونَ إِنَّ إِبۡرَٰهِـۧمَ وَإِسۡمَٰعِيلَ وَإِسۡحَٰقَ وَيَعۡقُوبَ وَٱلۡأَسۡبَاطَ كَانُواْ هُودًا أَوۡ نَصَٰرَىٰۗ قُلۡ ءَأَنتُمۡ أَعۡلَمُ أَمِ ٱللَّهُۗ وَمَنۡ أَظۡلَمُ مِمَّن كَتَمَ شَهَٰدَةً عِندَهُۥ مِنَ ٱللَّهِۗ وَمَا ٱللَّهُ بِغَٰفِلٍ عَمَّا تَعۡمَلُونَ ١٤٠

141. ಆ ಸಮುದಾಯವು ಕಳೆದುಹೋಗಿದೆ. ಅವರು ಮಾಡಿದ್ದು ಅವರಿಗೆ ಮತ್ತು ನೀವು ಮಾಡಿದ್ದು ನಿಮಗೆ. ಅವರು ಮಾಡಿದ ಕರ್ಮಗಳ ಬಗ್ಗೆ ನಿಮ್ಮೊಂದಿಗೆ ಪ್ರಶ್ನಿಸಲಾಗುವುದಿಲ್ಲ.

تِلۡكَ أُمَّةٞ قَدۡ خَلَتۡۖ لَهَا مَا كَسَبَتۡ وَلَكُم مَّا كَسَبۡتُمۡۖ وَلَا تُسۡـَٔلُونَ عَمَّا كَانُواْ يَعۡمَلُونَ ١٤١

142. “ಇವರು ಇದುವರೆಗೆ ಯಾವ ಕಿಬ್ಲದಲ್ಲಿದ್ದರೋ ಅದರಿಂದ ಇವರನ್ನು ತಿರುಗಿಸಿದ್ದೇನು?” ಎಂದು ಸದ್ಯವೇ ಜನರಲ್ಲಿರುವ ಕೆಲವು ತಿಳಿಗೇಡಿಗಳು ಕೇಳುವರು. ಹೇಳಿರಿ: “ಪೂರ್ವ ಮತ್ತು ಪಶ್ಚಿಮಗಳು ಅಲ್ಲಾಹನಿಗೆ ಸೇರಿದ್ದು. ಅವನು ಇಚ್ಛಿಸುವವರಿಗೆ ಅವನು ನೇರ ಮಾರ್ಗವನ್ನು ತೋರಿಸುತ್ತಾನೆ.”

سَيَقُولُ ٱلسُّفَهَآءُ مِنَ ٱلنَّاسِ مَا وَلَّىٰهُمۡ عَن قِبۡلَتِهِمُ ٱلَّتِي كَانُواْ عَلَيۡهَاۚ قُل لِّلَّهِ ٱلۡمَشۡرِقُ وَٱلۡمَغۡرِبُۚ يَهۡدِي مَن يَشَآءُ إِلَىٰ صِرَٰطٖ مُّسۡتَقِيمٖ ١٤٢

143. ಈ ರೀತಿ ನಾವು ನಿಮ್ಮನ್ನು ಒಂದು ಮಧ್ಯಮ ಸಮುದಾಯವನ್ನಾಗಿ ಮಾಡಿದೆವು; ನೀವು ಜನರಿಗೆ ಸಾಕ್ಷಿಗಳಾಗಲು ಮತ್ತು ಸಂದೇಶವಾಹಕರು ನಿಮಗೆ ಸಾಕ್ಷಿಯಾಗಲು. ನೀವು (ಮೊದಲು) ಯಾವ ಕಿಬ್ಲದಲ್ಲಿದ್ದಿರೋ ಅದನ್ನು ನಾವು ನಿಶ್ಚಯಿಸಿದ್ದು, ಸಂದೇಶವಾಹಕರನ್ನು ಹಿಂಬಾಲಿಸುವವರು ಯಾರು ಮತ್ತು ತಮ್ಮ ಹಿಮ್ಮಡಿಗಳಲ್ಲಿ ತಿರುಗಿ ನಡೆಯುವವರು ಯಾರು ಎಂದು ತಿಳಿಯುವುದಕ್ಕಾಗಿ ಮಾತ್ರ. ಅಲ್ಲಾಹು ಸನ್ಮಾರ್ಗದಲ್ಲಿ

وَكَذَٰلِكَ جَعَلۡنَٰكُمۡ أُمَّةٗ وَسَطٗا لِّتَكُونُواْ شُهَدَآءَ عَلَى ٱلنَّاسِ وَيَكُونَ ٱلرَّسُولُ عَلَيۡكُمۡ شَهِيدٗاۗ وَمَا جَعَلۡنَا ٱلۡقِبۡلَةَ ٱلَّتِي كُنتَ عَلَيۡهَآ إِلَّا لِنَعۡلَمَ مَن يَتَّبِعُ ٱلرَّسُولَ مِمَّن يَنقَلِبُ عَلَىٰ عَقِبَيۡهِۚ وَإِن كَانَتۡ لَكَبِيرَةً إِلَّا عَلَى ٱلَّذِينَ هَدَى ٱللَّهُۗ وَمَا كَانَ ٱللَّهُ لِيُضِيعَ إِيمَٰنَكُمۡۚ إِنَّ

[1] ಕ್ರೈಸ್ತರು ಹಳದಿ ಬಣ್ಣದ ನೀರನ್ನು ಮೀಸಲಿಟ್ಟಿದ್ದರು. ಅದನ್ನು ಎಲ್ಲಾ ಕ್ರೈಸ್ತ ಮಕ್ಕಳಿಗೆ ಮತ್ತು ಕ್ರೈಸ್ತ ಧರ್ಮ ಸ್ವೀಕರಿಸುವವರಿಗೆ ನೀಡುತ್ತಿದ್ದರು. ಬಾಪ್ಟಿಸಂ ಎಂದು ಕರೆಯುವ ಈ ಸಂಪ್ರದಾಯವು ಕ್ರಿಶ್ಚಿಯನ್ ಧರ್ಮದಲ್ಲಿ ಬಹಳ ಮುಖ್ಯವಾಗಿದೆ. ಇಲ್ಲಿ ಅಲ್ಲಾಹನ ಬಣ್ಣ ಎಂದರೆ ಮನುಷ್ಯನ ಸಹಜ ಮನೋಧರ್ಮವಾದ ಇಸ್ಲಾಂ ಧರ್ಮ. ಎಲ್ಲಾ ಪ್ರವಾದಿಗಳು ಈ ಧರ್ಮವನ್ನೇ ಬೋಧಿಸಿದ್ದರು.

ٱللَّهَ بِٱلنَّاسِ لَرَءُوفٞ رَّحِيمٞ ١٤٣

ಸೇರಿಸಿದವರ ಹೊರತು ಇತರೆಲ್ಲರಿಗೂ ಅದು ಬಹಳ ಕಷ್ಟದ ಕೆಲಸವಾಗಿದೆ. ಅಲ್ಲಾಹು ನಿಮ್ಮ ವಿಶ್ವಾಸವನ್ನು ವ್ಯರ್ಥಗೊಳಿಸುವುದಿಲ್ಲ. ನಿಶ್ಚಯವಾಗಿಯೂ ಅಲ್ಲಾಹು ಮನುಷ್ಯರೊಂದಿಗೆ ಅನುಕಂಪವುಳ್ಳವನು ಮತ್ತು ಕರುಣೆಯುಳ್ಳವನಾಗಿದ್ದಾನೆ.

---

قَدۡ نَرَىٰ تَقَلُّبَ وَجۡهِكَ فِي ٱلسَّمَآءِۖ فَلَنُوَلِّيَنَّكَ قِبۡلَةٗ تَرۡضَىٰهَاۚ فَوَلِّ وَجۡهَكَ شَطۡرَ ٱلۡمَسۡجِدِ ٱلۡحَرَامِۚ وَحَيۡثُ مَا كُنتُمۡ فَوَلُّواْ وُجُوهَكُمۡ شَطۡرَهُۥۗ وَإِنَّ ٱلَّذِينَ أُوتُواْ ٱلۡكِتَٰبَ لَيَعۡلَمُونَ أَنَّهُ ٱلۡحَقُّ مِن رَّبِّهِمۡۗ وَمَا ٱللَّهُ بِغَٰفِلٍ عَمَّا يَعۡمَلُونَ ١٤٤

**144.** ನಿಮ್ಮ ಮುಖವು ಪದೇ ಪದೇ ಆಕಾಶದ ಕಡೆಗೆ ತಿರುಗುವುದನ್ನು ನಾವು ನೋಡುತ್ತಿದ್ದೇವೆ. ಆದ್ದರಿಂದ ಈಗ ನಾವು ನಿಮ್ಮನ್ನು ನೀವು ಇಷ್ಟಪಡುವ ಕಿಬ್ಲದ ಕಡೆಗೆ ತಿರುಗಿಸುತ್ತೇವೆ.[1] ನೀವು ನಿಮ್ಮ ಮುಖವನ್ನು ಮಸ್ಜಿದುಲ್ ಹರಾಮ್‌ನ ಕಡೆಗೆ ತಿರುಗಿಸಿರಿ; ಮತ್ತು ನೀವು (ಮುಸ್ಲಿಮರು) ಎಲ್ಲೇ ಇದ್ದರೂ ನಿಮ್ಮ ಮುಖಗಳನ್ನು ಕೂಡ ಅದರ ಕಡೆಗೆ ತಿರುಗಿಸಿರಿ. ನಿಶ್ಚಯವಾಗಿಯೂ, ಇದು ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಸತ್ಯವೆಂದು ಗ್ರಂಥ ನೀಡಲಾದವರಿಗೆ ಚೆನ್ನಾಗಿ ತಿಳಿದಿದೆ.[2] ಅವರು ಮಾಡುತ್ತಿರುವ ಕರ್ಮಗಳ ಕುರಿತು ಅಲ್ಲಾಹು ತಿಳಿಯದವನಲ್ಲ.

---

وَلَئِنۡ أَتَيۡتَ ٱلَّذِينَ أُوتُواْ ٱلۡكِتَٰبَ بِكُلِّ ءَايَةٖ مَّا تَبِعُواْ قِبۡلَتَكَۚ وَمَآ أَنتَ بِتَابِعٖ قِبۡلَتَهُمۡۚ وَمَا بَعۡضُهُم بِتَابِعٖ قِبۡلَةَ بَعۡضٖۚ وَلَئِنِ ٱتَّبَعۡتَ أَهۡوَآءَهُم مِّنۢ بَعۡدِ مَا جَآءَكَ مِنَ ٱلۡعِلۡمِ إِنَّكَ إِذٗا لَّمِنَ ٱلظَّٰلِمِينَ ١٤٥

**145.** ಗ್ರಂಥ ನೀಡಲಾದವರಿಗೆ ನೀವು ಎಲ್ಲಾ ರೀತಿಯ ಪುರಾವೆಗಳನ್ನು ತಂದು ತೋರಿಸಿದರೂ ಅವರು ನಿಮ್ಮ ಕಿಬ್ಲವನ್ನು ಹಿಂಬಾಲಿಸುವುದಿಲ್ಲ. ನೀವು ಕೂಡ ಅವರ ಕಿಬ್ಲವನ್ನು ಅಂಗೀಕರಿಸುವುದಿಲ್ಲ. ಅವರಲ್ಲಿ ಒಬ್ಬರು ಇನ್ನೊಬ್ಬರ ಕಿಬ್ಲವನ್ನು ಅಂಗೀಕರಿಸುವುದಿಲ್ಲ. ನಿಮಗೆ ಜ್ಞಾನವು ಬಂದ ಬಳಿಕ ನೀವೇನಾದರೂ ಅವರ ಸ್ವೇಚ್ಛೆಗಳನ್ನು ಹಿಂಬಾಲಿಸಿದರೆ, ನಿಶ್ಚಯವಾಗಿಯೂ ನೀವು ಅಕ್ರಮಿಗಳಲ್ಲಿ ಸೇರುವಿರಿ.

---

ٱلَّذِينَ ءَاتَيۡنَٰهُمُ ٱلۡكِتَٰبَ يَعۡرِفُونَهُۥ كَمَا يَعۡرِفُونَ أَبۡنَآءَهُمۡۖ وَإِنَّ فَرِيقٗا مِّنۡهُمۡ لَيَكۡتُمُونَ ٱلۡحَقَّ وَهُمۡ يَعۡلَمُونَ ١٤٦

**146.** ನಾವು ಯಾರಿಗೆ ಗ್ರಂಥವನ್ನು ನೀಡಿದ್ದೇವೆಯೋ ಅವರು ತಮ್ಮ ಮಕ್ಕಳನ್ನು ಗುರುತಿಸುವಂತೆಯೇ ಅವರನ್ನು (ಪ್ರವಾದಿಯನ್ನು) ಗುರುತಿಸುತ್ತಾರೆ. ನಿಶ್ಚಯವಾಗಿಯೂ ಅವರಲ್ಲೊಂದು ಗುಂಪು

---

[1] ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮಕ್ಕಾದಿಂದ ಮದೀನಕ್ಕೆ ವಲಸೆ ಬಂದಾಗ, ಸುಮಾರು ಒಂದು ತಿಂಗಳ ಕಾಲ ಬೈತುಲ್ ಮುಕದ್ದಿಸ್‌ಗೆ ಅಭಿಮುಖವಾಗಿ ನಿಂತು ನಮಾಝ್ ನಿರ್ವಹಿಸುವುದನ್ನು ಮುಂದುವರಿಸಿದರು. ಅವರು ಕಾಬಾಲಯಕ್ಕೆ ತಿರುಗಿ ನಿಂತು ನಮಾಝ್ ನಿರ್ವಹಿಸಲು ಬಯಸುತ್ತಿದ್ದರು. ಅದಕ್ಕಾಗಿ ಅವರು ಪ್ರಾರ್ಥಿಸುತ್ತಿದ್ದರು ಮತ್ತು ಯಾವುದಾದರೂ ಸಂದೇಶ ಬರಬಹುದೇ ಎಂದು ಪದೇ ಪದೇ ಆಕಾಶದ ಕಡೆಗೆ ನೋಡುತ್ತಿದ್ದರು. ಕೊನೆಗೆ ಅಲ್ಲಾಹು ಕಿಬ್ಲ ಬದಲಾವಣೆಯ ಬಗ್ಗೆ ವಚನವನ್ನು ಅವತೀರ್ಣಗೊಳಿಸಿದನು. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಕಿಬ್ಲ ಬದಲಾವಣೆ ಮಾಡಿದಾಗ ಯಹೂದಿಗಳು ಮತ್ತು ಕಪಟ ವಿಶ್ವಾಸಿಗಳು ಗದ್ದಲವೆಬ್ಬಿಸಿದರು. ನಮಾಝ್ ಅಲ್ಲಾಹನ ಆರಾಧನೆಯಾಗಿದೆ ಮತ್ತು ಅಲ್ಲಾಹು ನಿಶ್ಚಯಿಸಿದ ದಿಕ್ಕಿಗೆ ತಿರುಗಿ ಅದನ್ನು ನಿರ್ವಹಿಸಬೇಕಾಗಿದೆ. ಪೂರ್ವ ಮತ್ತು ಪಶ್ಚಿಮ ದಿಕ್ಕುಗಳು ಅಲ್ಲಾಹನಿಗೆ ಸೇರಿದ್ದು. ಅವನು ಯಾವ ದಿಕ್ಕಿಗೆ ತಿರುಗಬೇಕೆಂದು ಆದೇಶಿಸಿದನೋ ಆ ದಿಕ್ಕಿಗೆ ತಿರುಗಿ ನಮಾಝ್ ನಿರ್ವಹಿಸುವುದು ದಾಸನ ಕರ್ತವ್ಯ. ಕಿಬ್ಲ ಬದಲಾವಣೆಯ ಆದೇಶ ಅಸರ್ ನಮಾಝ್‌ನ ಸಂದರ್ಭದಲ್ಲಿ ಬಂದಿತ್ತು ಮತ್ತು ಕಾಬಾಲಯಕ್ಕೆ ತಿರುಗಿ ಅಸರ್ ನಮಾಝ್ ನಿರ್ವಹಿಸಲಾಯಿತು.

[2] ಅಂತಿಮ ಪ್ರವಾದಿಯ ಕಿಬ್ಲ ಕಾಬಾ ಆಗಿದೆ ಎಂದು ಯಹೂದಿಗಳ ಗ್ರಂಥದಲ್ಲಿ ಸ್ಪಷ್ಟ ಸೂಚನೆಗಳಿದ್ದವು. ಅವರಿಗೆ ಇದು ಸ್ಪಷ್ಟವಾಗಿ ತಿಳಿದಿತ್ತು. ಆದರೂ ತಮ್ಮ ಅಹಂಕಾರ ಮತ್ತು ಅಸೂಯೆಯ ನಿಮಿತ್ತ ಅದನ್ನು ಸ್ವೀಕರಿಸಲು ಅವರು ಹಿಂದೇಟು ಹಾಕಿದರು.

ಸತ್ಯವನ್ನು ತಿಳಿದೂ ಸಹ ಅದನ್ನು ಮುಚ್ಚಿಡುತ್ತಾರೆ.

147. ಇದು ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಸತ್ಯವಾಗಿದೆ. ಆದ್ದರಿಂದ ನೀವು ಸಂಶಯಪಡುವವರಲ್ಲಿ ಸೇರಲೇಬೇಡಿ.

ٱلۡحَقُّ مِن رَّبِّكَ فَلَا تَكُونَنَّ مِنَ
ٱلۡمُمۡتَرِينَ ﴿١٤٧﴾

148. ಪ್ರತಿಯೊಬ್ಬರೂ (ಪ್ರಾರ್ಥನೆಯ ವೇಳೆ) ಒಂದಲ್ಲ ಒಂದು ಕಡೆಗೆ ತಿರುಗುತ್ತಾರೆ. ನೀವು ಸತ್ಕರ್ಮಗಳನ್ನು ಮಾಡಲು ಧಾವಿಸಿರಿ. ನೀವೆಲ್ಲೇ ಇದ್ದರೂ ಅಲ್ಲಾಹು ನಿಮ್ಮೆಲ್ಲರನ್ನೂ ತರುವನು. ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

وَلِكُلّٖ وِجۡهَةٌ هُوَ مُوَلِّيهَاۖ فَٱسۡتَبِقُواْ ٱلۡخَيۡرَٰتِۚ
أَيۡنَ مَا تَكُونُواْ يَأۡتِ بِكُمُ ٱللَّهُ جَمِيعًاۚ إِنَّ
ٱللَّهَ عَلَىٰ كُلِّ شَيۡءٖ قَدِيرٞ ﴿١٤٨﴾

149. ನೀವು ಎಲ್ಲಿಂದ ಹೊರಟರೂ ನಿಮ್ಮ ಮುಖವನ್ನು ಮಸ್ಜಿದುಲ್ ಹರಾಮ್‌ನ ಕಡೆಗೆ ತಿರುಗಿಸಿರಿ. ನಿಶ್ಚಯವಾಗಿಯೂ ಇದು ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಸತ್ಯವಾಗಿದೆ. ನೀವು ಮಾಡುತ್ತಿರುವ ಕರ್ಮಗಳ ಕುರಿತು ಅಲ್ಲಾಹು ತಿಳಿಯದವನಲ್ಲ.

وَمِنۡ حَيۡثُ خَرَجۡتَ فَوَلِّ وَجۡهَكَ شَطۡرَ
ٱلۡمَسۡجِدِ ٱلۡحَرَامِۖ وَإِنَّهُۥ لَلۡحَقُّ مِن رَّبِّكَۗ وَمَا
ٱللَّهُ بِغَٰفِلٍ عَمَّا تَعۡمَلُونَ ﴿١٤٩﴾

150. ನೀವು ಎಲ್ಲಿಂದ ಹೊರಟರೂ ನಿಮ್ಮ ಮುಖವನ್ನು ಮಸ್ಜಿದುಲ್ ಹರಾಮ್‌ನ ಕಡೆಗೆ ತಿರುಗಿಸಿರಿ. ನೀವು (ಮುಸ್ಲಿಮರು) ಎಲ್ಲೇ ಇದ್ದರೂ ನಿಮ್ಮ ಮುಖಗಳನ್ನು ಅದರ ಕಡೆಗೆ ತಿರುಗಿಸಿರಿ. ನಿಮ್ಮ ವಿರುದ್ಧ ಜನರಿಗೆ ಯಾವುದೇ ಸಾಕ್ಷ್ಯಾಧಾರ ಇಲ್ಲದಿರುವುದ-ಕ್ಕಾಗಿ; ಆದರೆ ಅವರ ಪೈಕಿ ಅಕ್ರಮವೆಸಗಿದವರ ಹೊರತು. ನೀವು ಅವರನ್ನು ಭಯಪಡಬೇಡಿ; ನನ್ನನ್ನು ಭಯಪಡಿರಿ. ನಾನು ನನ್ನ ಅನುಗ್ರಹವನ್ನು ನಿಮಗೆ ಪೂರ್ಣಗೊಳಿಸುವುದಕ್ಕಾಗಿ ಮತ್ತು ನೀವು ಸನ್ಮಾರ್ಗ ಪಡೆಯುವುದಕ್ಕಾಗಿ.

وَمِنۡ حَيۡثُ خَرَجۡتَ فَوَلِّ وَجۡهَكَ شَطۡرَ
ٱلۡمَسۡجِدِ ٱلۡحَرَامِۚ وَحَيۡثُ مَا كُنتُمۡ فَوَلُّواْ
وُجُوهَكُمۡ شَطۡرَهُۥ لِئَلَّا يَكُونَ لِلنَّاسِ
عَلَيۡكُمۡ حُجَّةٌ إِلَّا ٱلَّذِينَ ظَلَمُواْ مِنۡهُمۡ فَلَا
تَخۡشَوۡهُمۡ وَٱخۡشَوۡنِي وَلِأُتِمَّ نِعۡمَتِي عَلَيۡكُمۡ
وَلَعَلَّكُمۡ تَهۡتَدُونَ ﴿١٥٠﴾

151. ನಾವು ನಿಮ್ಮಿಂದಲೇ ನಿಮಗೆ ಒಬ್ಬ ಸಂದೇಶವಾಹಕ-ರನ್ನು ಕಳುಹಿಸಿದಂತೆ. ಅವರು ನಮ್ಮ ವಚನಗಳನ್ನು ನಿಮಗೆ ಓದಿಕೊಡುತ್ತಾರೆ, ನಿಮ್ಮನ್ನು ಶುದ್ಧೀಕರಿಸುತ್ತಾರೆ, ನಿಮಗೆ ಗ್ರಂಥವನ್ನು ಮತ್ತು ವಿವೇಕವನ್ನು ಕಲಿಸಿಕೊಡುತ್ತಾರೆ ಮತ್ತು ನಿಮಗೆ ತಿಳಿದಿರದ ವಿಷಯಗಳನ್ನು ಕಲಿಸಿಕೊಡುತ್ತಾರೆ.

كَمَآ أَرۡسَلۡنَا فِيكُمۡ رَسُولٗا مِّنكُمۡ يَتۡلُواْ
عَلَيۡكُمۡ ءَايَٰتِنَا وَيُزَكِّيكُمۡ وَيُعَلِّمُكُمُ
ٱلۡكِتَٰبَ وَٱلۡحِكۡمَةَ وَيُعَلِّمُكُم مَّا لَمۡ تَكُونُواْ
تَعۡلَمُونَ ﴿١٥١﴾

152. ಆದ್ದರಿಂದ ನೀವು ನನ್ನನ್ನು ಸ್ಮರಿಸಿರಿ; ನಾನು ನಿಮ್ಮನ್ನು ಸ್ಮರಿಸುತ್ತೇನೆ. ನನಗೆ ಕೃತಜ್ಞರಾಗಿರಿ; ನನಗೆ ಕೃತಘ್ನರಾಗಬೇಡಿ.

فَٱذۡكُرُونِيٓ أَذۡكُرۡكُمۡ وَٱشۡكُرُواْ لِي وَلَا
تَكۡفُرُونِ ﴿١٥٢﴾

153. ಓ ಸತ್ಯವಿಶ್ವಾಸಿಗಳೇ! ತಾಳ್ಮೆ ಮತ್ತು ನಮಾಝಿನ ಮೂಲಕ (ಅಲ್ಲಾಹನಲ್ಲಿ) ಸಹಾಯ ಬೇಡಿರಿ. ನಿಶ್ಚಯವಾಗಿಯೂ ಅಲ್ಲಾಹು ತಾಳ್ಮೆಯುಳ್ಳವರ ಜೊತೆಗಿದ್ದಾನೆ.

يَٰٓأَيُّهَا ٱلَّذِينَ ءَامَنُواْ ٱسۡتَعِينُواْ بِٱلصَّبۡرِ
وَٱلصَّلَوٰةِۚ إِنَّ ٱللَّهَ مَعَ ٱلصَّٰبِرِينَ ﴿١٥٣﴾

154. ಅಲ್ಲಾಹನ ಮಾರ್ಗದಲ್ಲಿ ಹುತಾತ್ಮರಾದವರನ್ನು 'ಸತ್ತವರು' ಎಂದು ಹೇಳಬೇಡಿ. ಅವರು ಜೀವಂತವಾಗಿದ್ದಾರೆ; ಆದರೆ ನಿಮಗೆ ಅದರ ಜ್ಞಾನವಿಲ್ಲ.

وَلَا تَقُولُواْ لِمَن يُقۡتَلُ فِي سَبِيلِ ٱللَّهِ أَمۡوَٰتُۢۚ بَلۡ أَحۡيَآءٞ وَلَٰكِن لَّا تَشۡعُرُونَ ١٥٤

155. ನಿಶ್ಚಯವಾಗಿಯೂ ನಾವು ನಿಮ್ಮನ್ನು ಶತ್ರುಗಳ ಭಯದಿಂದ, ಹಸಿವಿನಿಂದ, ಆಸ್ತಿ, ಜೀವ ಅಥವಾ ಹಣ್ಣುಗಳ ನಷ್ಟದಿಂದ, ಹೀಗೆ ಒಂದಲ್ಲ ಒಂದು ವಿಧದಲ್ಲಿ ಪರೀಕ್ಷಿಸುತ್ತೇವೆ; ತಾಳ್ಮೆ ವಹಿಸುವವರಿಗೆ ಸುವಾರ್ತೆ ನೀಡಿರಿ.

وَلَنَبۡلُوَنَّكُم بِشَيۡءٖ مِّنَ ٱلۡخَوۡفِ وَٱلۡجُوعِ وَنَقۡصٖ مِّنَ ٱلۡأَمۡوَٰلِ وَٱلۡأَنفُسِ وَٱلثَّمَرَٰتِۗ وَبَشِّرِ ٱلصَّٰبِرِينَ ١٥٥

156. ಅವರು ಯಾರೆಂದರೆ, ಅವರಿಗೆ ಏನಾದರೂ ಅನಾಹುತ ಸಂಭವಿಸುವಾಗ ಅವರು ಹೇಳುತ್ತಾರೆ: "ನಿಶ್ಚಯವಾಗಿಯೂ ನಾವು ಅಲ್ಲಾಹನಿಗೆ ಸೇರಿದವರು; ಮತ್ತು ನಾವು ಅವನ ಕಡೆಗೇ ಮರಳುವವರು."

ٱلَّذِينَ إِذَآ أَصَٰبَتۡهُم مُّصِيبَةٞ قَالُوٓاْ إِنَّا لِلَّهِ وَإِنَّآ إِلَيۡهِ رَٰجِعُونَ ١٥٦

157. ಅವರ ಮೇಲೆ ಅವರ ಪರಿಪಾಲಕನ (ಅಲ್ಲಾಹನ) ಕಡೆಯ ಅನುಗ್ರಹಗಳು ಮತ್ತು ದಯೆಯಿದೆ. ಅವರೇ ಸನ್ಮಾರ್ಗದಲ್ಲಿರುವವರು.

أُوْلَٰٓئِكَ عَلَيۡهِمۡ صَلَوَٰتٞ مِّن رَّبِّهِمۡ وَرَحۡمَةٞۖ وَأُوْلَٰٓئِكَ هُمُ ٱلۡمُهۡتَدُونَ ١٥٧

158. ನಿಶ್ಚಯವಾಗಿಯೂ ಸಫಾ ಮತ್ತು ಮರ್ವಾ ಅಲ್ಲಾಹನ ಚಿಹ್ನೆಗಳಲ್ಲಿ ಒಳಪಟ್ಟದ್ದಾಗಿವೆ. ಆದ್ದರಿಂದ ಅಲ್ಲಾಹನ ಭವನಕ್ಕೆ ಹಜ್ ಅಥವಾ ಉಮ್ರಾ ಮಾಡುವವರು ಇವುಗಳಿಗೆ ಪ್ರದಕ್ಷಿಣೆ ಮಾಡುವುದರಲ್ಲಿ ಯಾವುದೇ ದೋಷವಿಲ್ಲ.[1] ಸ್ವಯಂಪ್ರೇರಿತವಾಗಿ ಒಳಿತು ಮಾಡುವವರನ್ನು ಅಲ್ಲಾಹು ಮೆಚ್ಚುತ್ತಾನೆ ಮತ್ತು ಅವರ ಬಗ್ಗೆ ಅವನು ಚೆನ್ನಾಗಿ ತಿಳಿದಿದ್ದಾನೆ.

إِنَّ ٱلصَّفَا وَٱلۡمَرۡوَةَ مِن شَعَآئِرِ ٱللَّهِۖ فَمَنۡ حَجَّ ٱلۡبَيۡتَ أَوِ ٱعۡتَمَرَ فَلَا جُنَاحَ عَلَيۡهِ أَن يَطَّوَّفَ بِهِمَاۚ وَمَن تَطَوَّعَ خَيۡرٗا فَإِنَّ ٱللَّهَ شَاكِرٌ عَلِيمٌ ١٥٨

159. ನಾವು ಅವತೀರ್ಣಗೊಳಿಸಿದ ಸಾಕ್ಷ್ಯಾಧಾರಗಳನ್ನು ಮತ್ತು ಸನ್ಮಾರ್ಗವನ್ನು—ಅದನ್ನು ನಾವು ಗ್ರಂಥದಲ್ಲಿ ಜನರಿಗೆ ವಿವರಿಸಿಕೊಟ್ಟ ಬಳಿಕವೂ—ಬಚ್ಚಿಡುವವರು ಯಾರೋ ಅವರ ಮೇಲೆ ಅಲ್ಲಾಹನ ಶಾಪವಿದೆ; ಶಪಿಸುವವರೆಲ್ಲರ ಶಾಪವೂ ಇದೆ.

إِنَّ ٱلَّذِينَ يَكۡتُمُونَ مَآ أَنزَلۡنَا مِنَ ٱلۡبَيِّنَٰتِ وَٱلۡهُدَىٰ مِنۢ بَعۡدِ مَا بَيَّنَّٰهُ لِلنَّاسِ فِي ٱلۡكِتَٰبِ أُوْلَٰٓئِكَ يَلۡعَنُهُمُ ٱللَّهُ وَيَلۡعَنُهُمُ ٱللَّٰعِنُونَ ١٥٩

160. ಆದರೆ ಪಶ್ಚಾತ್ತಾಪಪಡುವವರು, ಸರಿಪಡಿಸುವವರು ಮತ್ತು ವಿವರಿಸಿಕೊಡುವವರು ಯಾರೋ (ಅವರು ಇದಕ್ಕೆ ಹೊರತಾಗಿದ್ದಾರೆ). ಅವರ ಪಶ್ಚಾತ್ತಾಪವನ್ನು ನಾನು ಸ್ವೀಕರಿಸುತ್ತೇನೆ. ನಾನು ಪಶ್ಚಾತ್ತಾಪ ಸ್ವೀಕರಿಸುವವನು ಮತ್ತು

إِلَّا ٱلَّذِينَ تَابُواْ وَأَصۡلَحُواْ وَبَيَّنُواْ فَأُوْلَٰٓئِكَ أَتُوبُ عَلَيۡهِمۡ وَأَنَا ٱلتَّوَّابُ ٱلرَّحِيمُ ١٦٠

[1] ಇಸ್ಲಾಂ ಸ್ವೀಕರಿಸುವ ಮೊದಲು ಮದೀನದ ಅನ್ಸಾರಿಗಳು ಮನಾತ್ ಎಂಬ ವಿಗ್ರಹದ ಹೆಸರಲ್ಲಿ ತಲ್ಬಿಯತ್ ಹೇಳುತ್ತಿದ್ದರು. ಅವರು ಪರ್ವತಗಳ ಮೇಲೆ ಅದನ್ನು ಪೂಜಿಸುತ್ತಿದ್ದರು. ಅವರು ಹಜ್ ನಿರ್ವಹಿಸಲು ಮಕ್ಕಾಗೆ ಬಂದರೆ ಸಫಾ ಮತ್ತು ಮರ್ವಾದ ನಡುವೆ ಸಈ ಮಾಡುವುದನ್ನು ಪಾಪವೆಂದು ಪರಿಗಣಿಸುತ್ತಿದ್ದರು. ಮುಸ್ಲಿಮರಾದ ಬಳಿಕ ಅವರು ಇದರ ಬಗ್ಗೆ ಪ್ರವಾದಿಯವರಲ್ಲಿ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ವಿಚಾರಿಸಿದಾಗ ಈ ವಚನವು ಅವತೀರ್ಣವಾಯಿತು.

ಕರುಣೆ ತೋರುವವನಾಗಿದ್ದೇನೆ.

161. ನಿಶ್ಚಯವಾಗಿಯೂ ಸತ್ಯನಿಷೇಧಿಗಳು ಮತ್ತು ಸತ್ಯನಿಷೇಧಿಗಳಾಗಿಯೇ ಸಾಯುವವರು ಯಾರೋ ಅವರ ಮೇಲೆ ಅಲ್ಲಾಹನ, ದೇವದೂತರುಗಳ ಮತ್ತು ಮನುಷ್ಯರೆಲ್ಲರ ಶಾಪವಿದೆ.

إِنَّ ٱلَّذِينَ كَفَرُواْ وَمَاتُواْ وَهُمۡ كُفَّارٌ أُوْلَٰٓئِكَ عَلَيۡهِمۡ لَعۡنَةُ ٱللَّهِ وَٱلۡمَلَٰٓئِكَةِ وَٱلنَّاسِ أَجۡمَعِينَ ١٦١

162. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅವರಿಗೆ ಶಿಕ್ಷೆಯಲ್ಲಿ ರಿಯಾಯಿತಿಯಿಲ್ಲ ಮತ್ತು ಅವರಿಗೆ ವಿರಾಮವನ್ನೂ ನೀಡಲಾಗುವುದಿಲ್ಲ.

خَٰلِدِينَ فِيهَا لَا يُخَفَّفُ عَنۡهُمُ ٱلۡعَذَابُ وَلَا هُمۡ يُنظَرُونَ ١٦٢

163. ನಿಮ್ಮ ದೇವನು ಏಕೈಕ ದೇವನು. ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ಅವನು ಪರಮ ದಯಾಳು ಮತ್ತು ಕರುಣಾನಿಧಿಯಾಗಿದ್ದಾನೆ.

وَإِلَٰهُكُمۡ إِلَٰهٞ وَٰحِدٞۖ لَّآ إِلَٰهَ إِلَّا هُوَ ٱلرَّحۡمَٰنُ ٱلرَّحِيمُ ١٦٣

164. ನಿಶ್ಚಯವಾಗಿಯೂ ಭೂಮ್ಯಾಕಾಶಗಳ ಸೃಷ್ಟಿಯಲ್ಲಿ, ರಾತ್ರಿ-ಹಗಲುಗಳ ಬದಲಾವಣೆಯಲ್ಲಿ, ಜನರಿಗೆ ಉಪಕರಿಸುವ ವಸ್ತುಗಳೊಂದಿಗೆ ಸಮುದ್ರದಲ್ಲಿ ಚಲಿಸುವ ನಾವೆಗಳಲ್ಲಿ, ಅಲ್ಲಾಹು ಆಕಾಶದಿಂದ ಮಳೆಯನ್ನು ಸುರಿಸಿ ಅದರ ಮೂಲಕ ನಿರ್ಜೀವ ಭೂಮಿಗೆ ಜೀವ ನೀಡುವುದರಲ್ಲಿ, ಭೂಮಿಯಲ್ಲಿ ಎಲ್ಲಾ ರೀತಿಯ ಜೀವಿಗಳನ್ನು ಹಬ್ಬಿಸಿರುವುದರಲ್ಲಿ, ಗಾಳಿಯು ದಿಕ್ಕನ್ನು ಬದಲಿಸುವುದರಲ್ಲಿ ಮತ್ತು ಭೂಮ್ಯಾಕಾಶಗಳ ನಡುವೆ ನಿಯಂತ್ರಿಸಲಾಗುವ ಮೋಡಗಳಲ್ಲಿ ಆಲೋಚಿಸುವ ಜನರಿಗೆ ಹಲವಾರು ದೃಷ್ಟಾಂತಗಳಿವೆ.

إِنَّ فِي خَلۡقِ ٱلسَّمَٰوَٰتِ وَٱلۡأَرۡضِ وَٱخۡتِلَٰفِ ٱلَّيۡلِ وَٱلنَّهَارِ وَٱلۡفُلۡكِ ٱلَّتِي تَجۡرِي فِي ٱلۡبَحۡرِ بِمَا يَنفَعُ ٱلنَّاسَ وَمَآ أَنزَلَ ٱللَّهُ مِنَ ٱلسَّمَآءِ مِن مَّآءٖ فَأَحۡيَا بِهِ ٱلۡأَرۡضَ بَعۡدَ مَوۡتِهَا وَبَثَّ فِيهَا مِن كُلِّ دَآبَّةٖ وَتَصۡرِيفِ ٱلرِّيَٰحِ وَٱلسَّحَابِ ٱلۡمُسَخَّرِ بَيۡنَ ٱلسَّمَآءِ وَٱلۡأَرۡضِ لَأٓيَٰتٖ لِّقَوۡمٖ يَعۡقِلُونَ ١٦٤

165. ಅಲ್ಲಾಹನಿಗೆ ಇತರರನ್ನು ಸರಿಸಾಟಿಯಾಗಿ ಮಾಡುವ ಕೆಲವರಿದ್ದಾರೆ. ಅಲ್ಲಾಹನನ್ನು ಪ್ರೀತಿಸುವಂತೆಯೇ ಅವರು ಅವರನ್ನೂ ಪ್ರೀತಿಸುತ್ತಾರೆ. ಆದರೆ ಸತ್ಯವಿಶ್ವಾಸಿಗಳು ಅಲ್ಲಾಹನನ್ನು (ಎಲ್ಲಕ್ಕಿಂತಲೂ) ಗಾಢವಾಗಿ ಪ್ರೀತಿಸುತ್ತಾರೆ.[1] ಅಕ್ರಮಿಗಳು (ಅಲ್ಲಾಹನ) ಶಿಕ್ಷೆಯನ್ನು ನೇರವಾಗಿ ನೋಡುವಾಗ, ಶಕ್ತಿ-ಸಾಮರ್ಥ್ಯವಿರುವುದು ಸಂಪೂರ್ಣವಾಗಿ ಅಲ್ಲಾಹನಿಗೆ ಮಾತ್ರ; ಮತ್ತು ಅಲ್ಲಾಹು ಅತಿಕಠೋರವಾಗಿ ಶಿಕ್ಷಿಸುತ್ತಾನೆಂದು ತಿಳಿಯುತ್ತಿದ್ದರೆ (ಎಷ್ಟು ಚೆನ್ನಾಗಿತ್ತು)!

وَمِنَ ٱلنَّاسِ مَن يَتَّخِذُ مِن دُونِ ٱللَّهِ أَندَادٗا يُحِبُّونَهُمۡ كَحُبِّ ٱللَّهِۖ وَٱلَّذِينَ ءَامَنُوٓاْ أَشَدُّ حُبّٗا لِّلَّهِۗ وَلَوۡ يَرَى ٱلَّذِينَ ظَلَمُوٓاْ إِذۡ يَرَوۡنَ ٱلۡعَذَابَ أَنَّ ٱلۡقُوَّةَ لِلَّهِ جَمِيعٗا وَأَنَّ ٱللَّهَ شَدِيدُ ٱلۡعَذَابِ ١٦٥

[1] ಮಕ್ಕಾದ ಬಹುದೇವ ವಿಶ್ವಾಸಿಗಳು ಅಲ್ಲಾಹನಿಗೆ ಸಹಭಾಗಿಗಳನ್ನು ಕಲ್ಪಿಸಿಕೊಂಡು ಅವರನ್ನು ಆರಾಧಿಸುತ್ತಿದ್ದರು. ಅಲ್ಲಾಹನನ್ನು ಪ್ರೀತಿಸುವಂತೆಯೇ ಅವರು ಆ ದೇವರುಗಳನ್ನು ಕೂಡ ಪ್ರೀತಿಸುತ್ತಿದ್ದರು. ಈ ಸನ್ನಿವೇಶವು ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಕಾಲಕ್ಕೆ ಮಾತ್ರ ಸೀಮಿತವಲ್ಲ. ಆಧುನಿಕ ಕಾಲದಲ್ಲೂ ಇದನ್ನು ಕಾಣಬಹುದಾಗಿದೆ. ತಮ್ಮನ್ನು ಮುಸ್ಲಿಮರೆಂದು ಕರೆಯುವವರಲ್ಲೂ ಈ ರೋಗವು ಕಾಣಿಸಿಕೊಂಡಿದೆ. ಅವರು ಅಲ್ಲಾಹನನ್ನು ಬಿಟ್ಟು ಮಹಾಪುರುಷರು ಮತ್ತು ಅವರ ಸಮಾಧಿಗಳನ್ನು ಆರಾಧಿಸುತ್ತಾರೆ. ಅಲ್ಲಾಹನನ್ನು ಮಾತ್ರ ಆರಾಧಿಸಿರಿ ಎಂದು ಹೇಳಿದರೆ ಮಕ್ಕಾದ ಬಹುದೇವ ವಿಶ್ವಾಸಿಗಳಂತೆ ಇವರಿಗೂ ಕೂಡ ಕೋಪ ಬರುತ್ತದೆ.

166. ಮುಖಂಡರು ತಮ್ಮ ಹಿಂಬಾಲಕರಿಂದ ದೂರ ಸರಿಯುವಾಗ, ಅವರೆಲ್ಲರೂ ಶಿಕ್ಷೆಯನ್ನು ನೇರವಾಗಿ ನೋಡುವಾಗ ಮತ್ತು ಅವರ ನಡುವಿನ ಸಂಬಂಧಗಳು ಕಳಚಿ ಬೀಳುವಾಗ!

إِذۡ تَبَرَّأَ ٱلَّذِينَ ٱتُّبِعُواْ مِنَ ٱلَّذِينَ ٱتَّبَعُواْ وَرَأَوُاْ ٱلۡعَذَابَ وَتَقَطَّعَتۡ بِهِمُ ٱلۡأَسۡبَابُ ١٦٦

167. ಹಿಂಬಾಲಕರು ಹೇಳುವರು: “ನಮಗೆ (ಇಹಲೋಕಕ್ಕೆ) ಮರಳುವ ಇನ್ನೊಂದು ಅವಕಾಶವು ಸಿಗುತ್ತಿದ್ದರೆ, ಅವರು ನಮ್ಮಿಂದ ದೂರವಾದಂತೆ ನಾವೂ ಅವರಿಂದ ದೂರವಾಗುವೆವು.” ಈ ರೀತಿ ಅಲ್ಲಾಹು ಅವರ ಕರ್ಮಗಳನ್ನು ಅವರಿಗೆ ವಿಷಾದವಾಗುವ ರೀತಿಯಲ್ಲಿ ತೋರಿಸುವನು. ಅವರು ನರಕಾಗ್ನಿಯಿಂದ ಹೊರಹೋಗುವುದೇ ಇಲ್ಲ.

وَقَالَ ٱلَّذِينَ ٱتَّبَعُواْ لَوۡ أَنَّ لَنَا كَرَّةٗ فَنَتَبَرَّأَ مِنۡهُمۡ كَمَا تَبَرَّءُواْ مِنَّاۗ كَذَٰلِكَ يُرِيهِمُ ٱللَّهُ أَعۡمَٰلَهُمۡ حَسَرَٰتٍ عَلَيۡهِمۡۖ وَمَا هُم بِخَٰرِجِينَ مِنَ ٱلنَّارِ ١٦٧

168. ಓ ಜನರೇ! ಭೂಮಿಯಲ್ಲಿರುವ ಧರ್ಮಸಮ್ಮತವಾದ ಮತ್ತು ಶುದ್ಧವಾದ ಆಹಾರವನ್ನು ತಿನ್ನಿರಿ. ಶೈತಾನನ ಹೆಜ್ಜೆಗಳನ್ನು ಹಿಂಬಾಲಿಸಬೇಡಿ. ನಿಶ್ಚಯವಾಗಿಯೂ ಅವನು ನಿಮ್ಮ ಪ್ರತ್ಯಕ್ಷ ವೈರಿಯಾಗಿದ್ದಾನೆ.

يَٰٓأَيُّهَا ٱلنَّاسُ كُلُواْ مِمَّا فِي ٱلۡأَرۡضِ حَلَٰلٗا طَيِّبٗا وَلَا تَتَّبِعُواْ خُطُوَٰتِ ٱلشَّيۡطَٰنِۚ إِنَّهُۥ لَكُمۡ عَدُوّٞ مُّبِينٌ ١٦٨

169. ಅವನು ನಿಮಗೆ ಕೆಡುಕು ಮತ್ತು ಅಶ್ಲೀಲತೆಗಳನ್ನು ಮಾಡಲು ಹಾಗೂ ಅಲ್ಲಾಹನ ವಿಷಯದಲ್ಲಿ ನಿಮಗೆ ಗೊತ್ತಿಲ್ಲದ್ದನ್ನು ಹೇಳಲು ಆದೇಶಿಸುತ್ತಾನೆ.

إِنَّمَا يَأۡمُرُكُم بِٱلسُّوٓءِ وَٱلۡفَحۡشَآءِ وَأَن تَقُولُواْ عَلَى ٱللَّهِ مَا لَا تَعۡلَمُونَ ١٦٩

170. “ಅಲ್ಲಾಹು ಅವತೀರ್ಣಗೊಳಿಸಿದ್ದನ್ನು ಅನುಸರಿಸಿರಿ” ಎಂದು ಅವರೊಡನೆ ಹೇಳಲಾದರೆ, ಅವರು ಹೇಳುತ್ತಾರೆ: “ಇಲ್ಲ, ನಮ್ಮ ಪೂರ್ವಜರು ಯಾವ ಮಾರ್ಗದಲ್ಲಿರುವುದನ್ನು ನಾವು ಕಂಡೆವೋ ಅದನ್ನೇ ನಾವು ಅನುಸರಿಸುತ್ತೇವೆ.”[1] ಅವರ ಪೂರ್ವಜರು ಏನೂ ತಿಳಿಯದವರು ಮತ್ತು ಸನ್ಮಾರ್ಗ ಪಡೆಯದವರಾಗಿದ್ದರೂ ಸಹ.

وَإِذَا قِيلَ لَهُمُ ٱتَّبِعُواْ مَآ أَنزَلَ ٱللَّهُ قَالُواْ بَلۡ نَتَّبِعُ مَآ أَلۡفَيۡنَا عَلَيۡهِ ءَابَآءَنَآۚ أَوَلَوۡ كَانَ ءَابَآؤُهُمۡ لَا يَعۡقِلُونَ شَيۡـٔٗا وَلَا يَهۡتَدُونَ ١٧٠

171. ಸತ್ಯನಿಷೇಧಿಗಳ ಉದಾಹರಣೆಯು ಕರೆ ಮತ್ತು ಕೂಗನ್ನು ಮಾತ್ರ ಕೇಳುವ ಜಾನುವಾರುಗಳ ಮುಂದೆ ಕಿರಿಚುವ ವ್ಯಕ್ತಿಯಂತೆ. ಅವರು ಕಿವುಡರು, ಮೂಕರು ಮತ್ತು ಕುರುಡರು. ಆದ್ದರಿಂದ ಅವರು ಅರ್ಥಮಾಡಿಕೊಳ್ಳುವುದಿಲ್ಲ.

وَمَثَلُ ٱلَّذِينَ كَفَرُواْ كَمَثَلِ ٱلَّذِي يَنۡعِقُ بِمَا لَا يَسۡمَعُ إِلَّا دُعَآءٗ وَنِدَآءٗۚ صُمُّۢ بُكۡمٌ عُمۡيٞ فَهُمۡ لَا يَعۡقِلُونَ ١٧١

172. ಓ ಸತ್ಯವಿಶ್ವಾಸಿಗಳೇ! ನಾವು ನಿಮಗೆ ನೀಡಿದ ಶುದ್ಧ ವಸ್ತುಗಳಿಂದ ತಿನ್ನಿರಿ ಮತ್ತು ಅಲ್ಲಾಹನಿಗೆ ಕೃತಜ್ಞರಾಗಿರಿ; ನೀವು ಅವನನ್ನು ಮಾತ್ರ ಆರಾಧಿಸುವವರಾಗಿದ್ದರೆ.

يَٰٓأَيُّهَا ٱلَّذِينَ ءَامَنُواْ كُلُواْ مِن طَيِّبَٰتِ مَا رَزَقۡنَٰكُمۡ وَٱشۡكُرُواْ لِلَّهِ إِن كُنتُمۡ إِيَّاهُ تَعۡبُدُونَ ١٧٢

---

[1] ಇಂತಹ ಜನರು ಇಂದು ಕೂಡ ಇದ್ದಾರೆ. ಧರ್ಮದಲ್ಲಿ ಯಾವುದೇ ಪುರಾವೆಯಿಲ್ಲದ ನವೀನಾಚಾರಗಳನ್ನು ತೊರೆಯಿರಿ ಎಂದು ಅವರೊಡನೆ ಹೇಳಿದರೆ, ಇವೆಲ್ಲವನ್ನೂ ನಮ್ಮ ಪೂರ್ವಜರು ಆಚರಿಸುತ್ತಿದ್ದರು; ನಾವು ಅವರನ್ನು ಹಿಂಬಾಲಿಸಿ ಅವರ ಮಾರ್ಗದಲ್ಲಿ ಚಲಿಸುತ್ತೇವೆ ಎಂದು ಅವರು ಹೇಳುತ್ತಾರೆ.

إِنَّمَا حَرَّمَ عَلَيۡكُمُ ٱلۡمَيۡتَةَ وَٱلدَّمَ وَلَحۡمَ ٱلۡخِنزِيرِ وَمَآ أُهِلَّ بِهِۦ لِغَيۡرِ ٱللَّهِۖ فَمَنِ ٱضۡطُرَّ غَيۡرَ بَاغٖ وَلَا عَادٖ فَلَآ إِثۡمَ عَلَيۡهِۚ إِنَّ ٱللَّهَ غَفُورٞ رَّحِيمٌ ﴿١٧٣﴾

173. ಅವನು ನಿಮಗೆ ಶವ, ರಕ್ತ, ಹಂದಿ ಮಾಂಸ ಮತ್ತು ಅಲ್ಲಾಹೇತರರ ಹೆಸರನ್ನು ಘೋಷಿಸಲಾದ ವಸ್ತುಗಳನ್ನು ಮಾತ್ರ ನಿಷೇಧಿಸಿದ್ದಾನೆ.[1] ಆದರೆ ಯಾರಾದರೂ (ಇವುಗಳನ್ನು ಸೇವಿಸಲು) ನಿರ್ಬಂಧಿತನಾದರೆ ಅವನ ಮೇಲೆ ದೋಷವಿಲ್ಲ. ಆದರೆ ಅವನು ಅಗತ್ಯಕ್ಕಿಂತ ಹೆಚ್ಚು ಸೇವಿಸಬಾರದು ಮತ್ತು (ಅಲ್ಲಾಹು ಅನುಮತಿಸಿದ) ಎಲ್ಲೆಯನ್ನು ಮೀರಬಾರದು. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ಕರುಣೆ ತೋರುವವನಾಗಿದ್ದಾನೆ.

إِنَّ ٱلَّذِينَ يَكۡتُمُونَ مَآ أَنزَلَ ٱللَّهُ مِنَ ٱلۡكِتَٰبِ وَيَشۡتَرُونَ بِهِۦ ثَمَنٗا قَلِيلًا أُوْلَٰٓئِكَ مَا يَأۡكُلُونَ فِي بُطُونِهِمۡ إِلَّا ٱلنَّارَ وَلَا يُكَلِّمُهُمُ ٱللَّهُ يَوۡمَ ٱلۡقِيَٰمَةِ وَلَا يُزَكِّيهِمۡ وَلَهُمۡ عَذَابٌ أَلِيمٌ ﴿١٧٤﴾

174. ನಿಶ್ಚಯವಾಗಿಯೂ ಅಲ್ಲಾಹು ಅವತೀರ್ಣಗೊಳಿಸಿದ ಗ್ರಂಥವನ್ನು ಬಚ್ಚಿಡುವವರು ಮತ್ತು ಅದನ್ನು ಅಲ್ಪ ಬೆಲೆಗೆ ಮಾರುವವರು ಯಾರೋ—ಅವರು ತಮ್ಮ ಉದರಗಳಲ್ಲಿ ಅಗ್ನಿಯನ್ನಲ್ಲದೆ ಬೇರೇನನ್ನೂ ತುಂಬಿಸುವುದಿಲ್ಲ. ಪುನರುತ್ಥಾನ ದಿನದಂದು ಅಲ್ಲಾಹು ಅವರೊಡನೆ ಮಾತನಾಡುವುದಿಲ್ಲ ಮತ್ತು ಅವರನ್ನು ಶುದ್ಧೀಕರಿಸುವುದಿಲ್ಲ. ಅವರಿಗೆ ಯಾತನಾಮಯ ಶಿಕ್ಷೆಯಿದೆ.

أُوْلَٰٓئِكَ ٱلَّذِينَ ٱشۡتَرَوُاْ ٱلضَّلَٰلَةَ بِٱلۡهُدَىٰ وَٱلۡعَذَابَ بِٱلۡمَغۡفِرَةِۚ فَمَآ أَصۡبَرَهُمۡ عَلَى ٱلنَّارِ ﴿١٧٥﴾

175. ಅವರೇ ಸನ್ಮಾರ್ಗದ ಬದಲಿಗೆ ದುರ್ಮಾರ್ಗವನ್ನು ಮತ್ತು ಕ್ಷಮೆಯ ಬದಲಿಗೆ ಶಿಕ್ಷೆಯನ್ನು ಖರೀದಿಸಿದವರು. ಅವರು ನರಕ ಶಿಕ್ಷೆಯನ್ನು ಎಷ್ಟರಮಟ್ಟಿಗೆ ಸಹಿಸಿಕೊಳ್ಳುವರು!

ذَٰلِكَ بِأَنَّ ٱللَّهَ نَزَّلَ ٱلۡكِتَٰبَ بِٱلۡحَقِّۗ وَإِنَّ ٱلَّذِينَ ٱخۡتَلَفُواْ فِي ٱلۡكِتَٰبِ لَفِي شِقَاقِۭ بَعِيدٖ ﴿١٧٦﴾

176. ಅದೇಕೆಂದರೆ, ಅಲ್ಲಾಹು ಗ್ರಂಥವನ್ನು ಸತ್ಯ ಸಮೇತ ಅವತೀರ್ಣ-ಗೊಳಿಸಿದ್ದನು. ಗ್ರಂಥದ ವಿಷಯದಲ್ಲಿ ಭಿನ್ನಮತದಲ್ಲಿರುವವರು ವಿದೂರ ಮನಸ್ತಾಪದಲ್ಲಿದ್ದಾರೆ.

لَّيۡسَ ٱلۡبِرَّ أَن تُوَلُّواْ وُجُوهَكُمۡ قِبَلَ ٱلۡمَشۡرِقِ وَٱلۡمَغۡرِبِ وَلَٰكِنَّ ٱلۡبِرَّ مَنۡ ءَامَنَ بِٱللَّهِ وَٱلۡيَوۡمِ ٱلۡأٓخِرِ وَٱلۡمَلَٰٓئِكَةِ وَٱلۡكِتَٰبِ وَٱلنَّبِيِّـۧنَ وَءَاتَى ٱلۡمَالَ عَلَىٰ حُبِّهِۦ ذَوِي ٱلۡقُرۡبَىٰ وَٱلۡيَتَٰمَىٰ وَٱلۡمَسَٰكِينَ وَٱبۡنَ ٱلسَّبِيلِ وَٱلسَّآئِلِينَ وَفِي ٱلرِّقَابِ وَأَقَامَ ٱلصَّلَوٰةَ وَءَاتَى ٱلزَّكَوٰةَ وَٱلۡمُوفُونَ بِعَهۡدِهِمۡ إِذَا عَٰهَدُواْۖ وَٱلصَّٰبِرِينَ فِي ٱلۡبَأۡسَآءِ وَٱلضَّرَّآءِ وَحِينَ ٱلۡبَأۡسِۗ أُوْلَٰٓئِكَ ٱلَّذِينَ صَدَقُواْۖ

177. ಒಳಿತು ಎಂದರೆ ನೀವು ನಿಮ್ಮ ಮುಖಗಳನ್ನು ಪೂರ್ವಕ್ಕೆ ಅಥವಾ ಪಶ್ಚಿಮಕ್ಕೆ ತಿರುಗಿಸುವುದಲ್ಲ. ಬದಲಿಗೆ, ಒಳಿತಿನಲ್ಲಿರುವವನು ಯಾರೆಂದರೆ ಅಲ್ಲಾಹನಲ್ಲಿ, ಅಂತ್ಯದಿನದಲ್ಲಿ, ದೇವದೂತರುಗ-ಳಲ್ಲಿ, ಗ್ರಂಥದಲ್ಲಿ ಮತ್ತು ಪ್ರವಾದಿಗಳಲ್ಲಿ ವಿಶ್ವಾಸವಿಡುವವನು, ಧನದ ಮೇಲೆ ಪ್ರೀತಿಯಿದ್ದೂ ಸಹ ಅದನ್ನು ಸಂಬಂಧಿಕರಿಗೆ, ಅನಾಥರಿಗೆ, ನಿರ್ಗತಿಕರಿಗೆ, ದಾರಿಹೋಕನಿಗೆ, ಬೇಡುವವರಿಗೆ ಮತ್ತು ಗುಲಾಮ ವಿಮೋಚನೆಗೆ ಖರ್ಚು ಮಾಡುವವನು, ನಮಾಝನ್ನು ಸಂಸ್ಥಾಪಿಸುವವನು, ಝಕಾತ್ ನೀಡುವವನು, ಕರಾರು ಮಾಡಿದರೆ ಅದನ್ನು ನೆರವೇರಿಸುವವನು ಮತ್ತು

---

[1] ಇಲ್ಲಿ ನಾಲ್ಕು ನಿಷೇಧಿತ ವಸ್ತುಗಳ ಬಗ್ಗೆ ಉಲ್ಲೇಖಿಸಲಾಗಿದೆ. ವಚನದಲ್ಲಿ "ಇನ್ನಮಾ" (ಮಾತ್ರ) ಎಂಬ ಪದ ಬಳಸಿರುವುದರಿಂದ ನಿಷೇಧಿತ ವಸ್ತುಗಳು ನಾಲ್ಕಕ್ಕೆ ಮಾತ್ರ ಸೀಮಿತ ಎಂದು ಅರ್ಥ ಮಾಡಿಕೊಳ್ಳಬಾರದು. ನಿಷೇಧಿತ ವಸ್ತುಗಳು ಈ ನಾಲ್ಕಕ್ಕೆ ಸೀಮಿತವಲ್ಲ. ಇದು ಸಂದರ್ಭಕ್ಕೆ ಅನುಗುಣವಾಗಿ ಅವತೀರ್ಣವಾದ ವಚನವಾಗಿರುವುದರಿಂದ ಇದರಲ್ಲಿ ನಾಲ್ಕು ವಸ್ತುಗಳನ್ನು ಮಾತ್ರ ನಿಷಿದ್ಧವೆಂದು ಹೇಳಲಾಗಿದೆ.

وَأُوْلَـٰٓئِكَ هُمُ ٱلْمُتَّقُونَ ﴿١٧٧﴾

ಬಡತನ, ಸಂಕಷ್ಟ ಹಾಗೂ ಯುದ್ಧಗಳ ಸಂದರ್ಭಗಳಲ್ಲಿ ತಾಳ್ಮೆ-ಯಿಂದಿರುವವರು. ಅವರೇ (ನಿಜವಾದ) ಸತ್ಯವಂತರು ಮತ್ತು ಅವರೇ ದೇವಭಯವುಳ್ಳವರು.

---

يَـٰٓأَيُّهَا ٱلَّذِينَ ءَامَنُواْ كُتِبَ عَلَيْكُمُ
ٱلْقِصَاصُ فِى ٱلْقَتْلَى ۖ ٱلْحُرُّ بِٱلْحُرِّ وَٱلْعَبْدُ
بِٱلْعَبْدِ وَٱلْأُنثَىٰ بِٱلْأُنثَىٰ ۚ فَمَنْ عُفِىَ لَهُۥ مِنْ
أَخِيهِ شَىْءٌ فَٱتِّبَاعٌۢ بِٱلْمَعْرُوفِ وَأَدَآءٌ إِلَيْهِ
بِإِحْسَـٰنٍ ۗ ذَٰلِكَ تَخْفِيفٌ مِّن رَّبِّكُمْ وَرَحْمَةٌ ۗ
فَمَنِ ٱعْتَدَىٰ بَعْدَ ذَٰلِكَ فَلَهُۥ عَذَابٌ أَلِيمٌ ﴿١٧٨﴾

178. ಓ ಸತ್ಯವಿಶ್ವಾಸಿಗಳೇ! ಕೊಲೆಯಾದವರ ವಿಷಯದಲ್ಲಿ ಪ್ರತೀಕಾರ ಪಡೆಯುವುದನ್ನು ನಿಮಗೆ ಕಡ್ಡಾಯಗೊಳಿಸಲಾಗಿದೆ. ಸ್ವತಂತ್ರನ ಬದಲಿಗೆ ಸ್ವತಂತ್ರ, ಗುಲಾಮನ ಬದಲಿಗೆ ಗುಲಾಮ ಮತ್ತು ಹೆಣ್ಣಿನ ಬದಲಿಗೆ ಹೆಣ್ಣು. ಯಾರಿಗಾದರೂ ಅವನ ಸಹೋದರನ (ಕೊಲೆಯಾದವನ) ಕಡೆಯಿಂದ ಮಾಫಿ ನೀಡಲಾದರೆ, ಅವನು ಸ್ವೀಕಾರಾರ್ಹ ರೀತಿಯನ್ನು ಅನುಸರಿಸಲಿ ಮತ್ತು ಒಳ್ಳೆಯ ರೀತಿಯಲ್ಲಿ ಪರಿಹಾರವನ್ನು ನೀಡಲಿ. ಅದು ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ರಿಯಾಯಿತಿ ಮತ್ತು ದಯೆಯಾಗಿದೆ. ಅದರ ನಂತರವೂ ಯಾರಾದರೂ ಅತಿರೇಕವೆಸಗಿದರೆ ಅವನಿಗೆ ವೇದನಾಭರಿತ ಶಿಕ್ಷೆಯಿದೆ.

---

وَلَكُمْ فِى ٱلْقِصَاصِ حَيَوٰةٌ يَـٰٓأُوْلِى ٱلْأَلْبَـٰبِ
لَعَلَّكُمْ تَتَّقُونَ ﴿١٧٩﴾

179. ಓ ಬುದ್ಧಿವಂತರೇ! ಪ್ರತೀಕಾರ ಪಡೆಯುವುದರಲ್ಲಿ ನಿಮಗೆ ಜೀವನವಿದೆ. ನೀವು ದೇವಭಯವುಳ್ಳವರಾಗುವುದಕ್ಕಾಗಿ.[1]

---

كُتِبَ عَلَيْكُمْ إِذَا حَضَرَ أَحَدَكُمُ ٱلْمَوْتُ
إِن تَرَكَ خَيْرًا ٱلْوَصِيَّةُ لِلْوَٰلِدَيْنِ وَٱلْأَقْرَبِينَ
بِٱلْمَعْرُوفِ ۖ حَقًّا عَلَى ٱلْمُتَّقِينَ ﴿١٨٠﴾

180. ನಿಮ್ಮಲ್ಲೊಬ್ಬರಿಗೆ ಮರಣವು ಆಸನ್ನವಾಗಿ ಅವನು ಆಸ್ತಿಯನ್ನು ಬಿಟ್ಟು ಹೋಗುವುದಾದರೆ, ತಂದೆ-ತಾಯಿಗೆ ಮತ್ತು ನಿಕಟ ಸಂಬಂಧಿಕರಿಗೆ ಸ್ವೀಕಾರಾರ್ಹ ರೀತಿಯಲ್ಲಿ ಉಯಿಲು ಮಾಡುವುದನ್ನು ಕಡ್ಡಾಯಗೊಳಿಸಲಾಗಿದೆ.[2] ಇದು ದೇವಭಯ-ವುಳ್ಳವರ ಕರ್ತವ್ಯವಾಗಿದೆ.

---

فَمَنۢ بَدَّلَهُۥ بَعْدَ مَا سَمِعَهُۥ فَإِنَّمَآ إِثْمُهُۥ عَلَى
ٱلَّذِينَ يُبَدِّلُونَهُۥٓ ۚ إِنَّ ٱللَّهَ سَمِيعٌ عَلِيمٌ ﴿١٨١﴾

181. ಆದರೆ, ಅದನ್ನು (ಉಯಿಲನ್ನು) ಕೇಳಿದ ಬಳಿಕವೂ ಯಾರಾದರೂ ಅದನ್ನು ಬದಲಾಯಿಸಿದರೆ, ಆ ಪಾಪವು ಬದಲಾಯಿಸುವ-ವರಿಗೆ ಮಾತ್ರವಾಗಿದೆ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲವನ್ನೂ ಕೇಳುವವನು ಮತ್ತು ತಿಳಿದವನಾಗಿದ್ದಾನೆ.

---

فَمَنْ خَافَ مِن مُّوصٍ جَنَفًا أَوْ إِثْمًا فَأَصْلَحَ
بَيْنَهُمْ فَلَآ إِثْمَ عَلَيْهِ ۚ إِنَّ ٱللَّهَ غَفُورٌ رَّحِيمٌ ﴿١٨٢﴾

182. ಆದರೆ, ಉಯಿಲು ಮಾಡಿದವನಿಂದ ಏನಾದರೂ ತಪ್ಪು ಅಥವಾ ಪಾಪವು ಸಂಭವಿಸಿದೆಯೆಂದು ಹೆದರಿ, ಯಾರಾದರೂ ಸಂಬಂಧಿತ ಕಕ್ಷಿಗಳ ಮಧ್ಯೆ ಸಂಧಾನ ಮಾಡಿದರೆ ಅದರಲ್ಲಿ

---

[1] ಕೊಲೆ ಮಾಡುವವನಿಗೆ ಪ್ರತೀಕಾರ ನಿಯಮದ ಮೂಲಕ ತಾನೂ ಕೊಲೆಯಾಗುವೆನು ಎಂಬ ಭಯ ಮೂಡಿದರೆ ಅವನು ಕೊಲೆ ಮಾಡುವ ಮೊದಲು ಸಾವಿರ ಬಾರಿ ಯೋಚಿಸುತ್ತಾನೆ. ಕೊಲೆಗೆ ಕೊಲೆಯೆಂಬ ಪ್ರತೀಕಾರ ನಿಯಮವನ್ನು ಜಾರಿಗೊಳಿಸಿದರೆ ಆ ಸಮಾಜವು ಕೊಲೆಗಳಿಂದ ಸಂಪೂರ್ಣ ಮುಕ್ತವಾಗುತ್ತದೆ ಎಂಬುದರಲ್ಲಿ ಸಂಶಯವಿಲ್ಲ. ಇಂದು ಜನರು ಹೆಚ್ಚಾಗಿ ಕೊಲೆ ಮಾಡುವುದು ಕಾನೂನಿನಿಂದ ಸುಲಭವಾಗಿ ಪಾರಾಗಲು ಸಾಧ್ಯವಿದೆ ಎಂಬ ಭರವಸೆಯಿಂದಲೇ ಆಗಿದೆ.

[2] ಈ ವಚನವು ಪ್ರತಿಯೊಬ್ಬ ವಾರಿಸುದಾರನಿಗೂ ಅವನ ಹಕ್ಕನ್ನು ನಿಖರವಾಗಿ ನಿಗದಿಪಡಿಸಲಾದ ವಾರಿಸು ಹಕ್ಕಿನ ವಚನವು ಅವತೀರ್ಣವಾಗುವ ಮೊದಲು ಅವತೀರ್ಣವಾಗಿದೆ. ವಾರಿಸು ಹಕ್ಕಿನ ವಚನವು ಅವತೀರ್ಣವಾದ ಬಳಿಕ ಈ ವಚನದಲ್ಲಿರುವ ನಿಯಮವನ್ನು ರದ್ದುಗೊಳಿಸಲಾಗಿದೆ.

ಅವರಿಗೆ ದೋಷವಿಲ್ಲ. ನಿಶ್ಚಯವಾಗಿಯೂ ಅಲ್ಲಾಹು
ಕ್ಷಮಿಸುವವನು ಮತ್ತು ಕರುಣೆ ತೋರುವವನಾಗಿದ್ದಾನೆ.

---

183. ಓ ಸತ್ಯವಿಶ್ವಾಸಿಗಳೇ! ನಿಮಗಿಂತ ಮುಂಚಿನವರಿಗೆ ಕಡ್ಡಾಯಗೊಳಿ-
ಸಲಾದಂತೆ ನಿಮಗೂ ಉಪವಾಸವನ್ನು ಕಡ್ಡಾಯಗೊಳಿಸಲಾಗಿದೆ.
ನೀವು ದೇವಭಯವುಳ್ಳವರಾಗುವುದಕ್ಕಾಗಿ.

يَـٰٓأَيُّهَا ٱلَّذِينَ ءَامَنُواْ كُتِبَ عَلَيۡكُمُ ٱلصِّيَامُ
كَمَا كُتِبَ عَلَى ٱلَّذِينَ مِن قَبۡلِكُمۡ لَعَلَّكُمۡ
تَتَّقُونَ ١٨٣

---

184. ಬೆರಳೆಣಿಕೆಯ ಕೆಲವು ದಿನಗಳು ಮಾತ್ರ. ನಿಮ್ಮಲ್ಲಿ ಯಾರಾದರೂ
ಅನಾರೋಗ್ಯದಲ್ಲಿದ್ದರೆ ಅಥವಾ ಪ್ರಯಾಣದಲ್ಲಿದ್ದರೆ ಅವನು ಇತರ
ದಿನಗಳಲ್ಲಿ ಆ ಎಣಿಕೆಯನ್ನು ಪೂರ್ತಿ ಮಾಡಲಿ.[1] (ಉಪವಾಸ
ಆಚರಿಸಲು) ಸಾಧ್ಯವಾಗುವವರು[2] (ಅದರ ಬದಲಿಗೆ) ಪ್ರಾಯಶ್ಚಿ-
ತ್ತವಾಗಿ ಒಬ್ಬ ಬಡವನಿಗೆ ಆಹಾರವನ್ನು ನೀಡಲಿ. ಯಾರಾದರೂ
ಸ್ವಯಂ ಪ್ರೇರಣೆಯಿಂದ ಒಳಿತು ಮಾಡಿದರೆ ಅದು ಅವನಿಗೆ
ಒಳಿತಾಗಿದೆ. ಆದರೆ ಉಪವಾಸ ಆಚರಿಸುವುದೇ ನಿಮಗೆ
ಒಳ್ಳೆಯದು.[3] ನೀವು ತಿಳಿದವರಾಗಿದ್ದರೆ.

أَيَّامٗا مَّعۡدُودَٰتٖۚ فَمَن كَانَ مِنكُم مَّرِيضًا
أَوۡ عَلَىٰ سَفَرٖ فَعِدَّةٞ مِّنۡ أَيَّامٍ أُخَرَۚ وَعَلَى ٱلَّذِينَ
يُطِيقُونَهُۥ فِدۡيَةٞ طَعَامُ مِسۡكِينٖۖ فَمَن تَطَوَّعَ
خَيۡرٗا فَهُوَ خَيۡرٞ لَّهُۥۚ وَأَن تَصُومُواْ خَيۡرٞ لَّكُمۡ
إِن كُنتُمۡ تَعۡلَمُونَ ١٨٤

---

185. ರಮದಾನ್ ಎಂದರೆ ಜನರಿಗೆ ಸನ್ಮಾರ್ಗವನ್ನು ತೋರಿಸಿಕೊಡುವ
ಮತ್ತು ಸನ್ಮಾರ್ಗ ಹಾಗೂ ಸತ್ಯಾಸತ್ಯತೆಗಳನ್ನು ಬೇರ್ಪಡಿಸುವ
ಪುರಾವೆಗಳನ್ನು ಹೊಂದಿರುವ ಪವಿತ್ರ ಕುರ್‌ಆನ್
ಅವತೀರ್ಣವಾದ ತಿಂಗಳು. ಆದ್ದರಿಂದ ನಿಮ್ಮಲ್ಲಿ ಯಾರಾದರೂ
ಆ ತಿಂಗಳಿಗೆ ಸಾಕ್ಷಿಯಾದರೆ ಅವನು ಉಪವಾಸವನ್ನು ಆಚರಿಸಲಿ.
ಯಾರಾದರೂ ಅನಾರೋಗ್ಯದಲ್ಲಿದ್ದರೆ ಅಥವಾ ಪ್ರಯಾಣ-
ದಲ್ಲಿದ್ದರೆ ಅವನು ಇತರ ದಿನಗಳಲ್ಲಿ ಆ ಎಣಿಕೆಯನ್ನು ಪೂರ್ತಿ
ಮಾಡಲಿ. ಅಲ್ಲಾಹು ನಿಮಗೆ ಸುಲಭ ಮಾಡಲು ಬಯಸುತ್ತಾನೆ;
ಅವನು ನಿಮಗೆ ಕಷ್ಟ ಕೊಡಲು ಬಯಸುವುದಿಲ್ಲ. ನೀವು

شَهۡرُ رَمَضَانَ ٱلَّذِيٓ أُنزِلَ فِيهِ ٱلۡقُرۡءَانُ هُدٗى
لِّلنَّاسِ وَبَيِّنَٰتٖ مِّنَ ٱلۡهُدَىٰ وَٱلۡفُرۡقَانِۚ فَمَن
شَهِدَ مِنكُمُ ٱلشَّهۡرَ فَلۡيَصُمۡهُۖ وَمَن كَانَ
مَرِيضًا أَوۡ عَلَىٰ سَفَرٖ فَعِدَّةٞ مِّنۡ أَيَّامٍ أُخَرَۗ
يُرِيدُ ٱللَّهُ بِكُمُ ٱلۡيُسۡرَ وَلَا يُرِيدُ بِكُمُ
ٱلۡعُسۡرَ وَلِتُكۡمِلُواْ ٱلۡعِدَّةَ وَلِتُكَبِّرُواْ ٱللَّهَ عَلَىٰ مَا
هَدَىٰكُمۡ وَلَعَلَّكُمۡ تَشۡكُرُونَ ١٨٥

---

[1] ರಮದಾನ್ ತಿಂಗಳಲ್ಲಿ ಉಪವಾಸ ಆಚರಿಸಲು ಸಾಧ್ಯವಾಗದ ರೋಗಿಗಳಿಗೆ ಮತ್ತು ಪ್ರಯಾಣಿಕರಿಗೆ ಉಪವಾಸ ತೊರೆಯಲು ಅನುಮತಿಯಿದೆ. ಅವರು ಆ ಉಪವಾಸಗಳನ್ನು ನಂತರ ನಿರ್ವಹಿಸಿದರೆ ಸಾಕು.

[2] ಅಂದರೆ ಬಹಳ ಕಷ್ಟದಿಂದ ಉಪವಾಸ ಆಚರಿಸಲು ಸಾಧ್ಯವಾಗುವವರು. ಉದಾಹರಣೆಗೆ, ವಯೋವೃದ್ಧರು ಮತ್ತು ಗುಣವಾಗುವ ನಿರೀಕ್ಷೆಯಿಲ್ಲದ ಕಾಯಿಲೆಯಿಂದ ಬಳಲುವವರಿಗೆ ಉಪವಾಸ ಆಚರಿಸಲು ಕಷ್ಟವಾಗುವುದಾದರೆ ಅವರು ಉಪವಾಸ ತೊರೆದು ಪರಿಹಾರದ ರೂಪದಲ್ಲಿ ಒಬ್ಬ ಬಡವನಿಗೆ ಅನ್ನದಾನ ಮಾಡಿದರೆ ಸಾಕು. ಆದರೆ ಹೆಚ್ಚಿನ ವ್ಯಾಖ್ಯಾನಕಾರರ ಅಭಿಪ್ರಾಯ ಪ್ರಕಾರ ಉಪವಾಸ ಆಚರಿಸಲು ಸಾಧ್ಯವಾಗುವ ಎಲ್ಲರೂ ಇದರಲ್ಲಿ ಒಳಪಡುತ್ತಾರೆ. ಇಸ್ಲಾಮಿನ ಆರಂಭಕಾಲದಲ್ಲಿ ಜನರಿಗೆ ಉಪವಾಸ ಆಚರಿಸುವ ಅಭ್ಯಾಸವಿಲ್ಲದ್ದರಿಂದ ಉಪವಾಸ ಆಚರಿಸುವುದನ್ನು ತೊರೆದು ಅದರ ಬದಲಿಗೆ ಒಬ್ಬ ಬಡವನಿಗೆ ಅನ್ನದಾನ ಮಾಡುವ ರಿಯಾಯಿತಿ ನೀಡಲಾಗಿತ್ತು. ನಂತರ ಈ ರಿಯಾಯಿತಿಯನ್ನು ರದ್ದುಗೊಳಿಸಿ ಉಪವಾಸ ಆಚರಿಸಲು ಸಾಧ್ಯವಾಗುವ ಎಲ್ಲರಿಗೂ ಉಪವಾಸ ಆಚರಿಸುವುದನ್ನು ಕಡ್ಡಾಯಗೊಳಿಸಲಾಯಿತು. ಆದರೆ ವಯೋವೃದ್ಧರಿಗೆ ಮತ್ತು ನಿತ್ಯ ರೋಗಿಗಳಿಗೆ ಉಪವಾಸ ಆಚರಿಸಲು ಕಷ್ಟವಾಗುವುದಾದರೆ ಅದರ ಬದಲಿಗೆ ಪರಿಹಾರ ನೀಡಬಹುದೆಂಬ ನಿಯಮವನ್ನು ಊರ್ಜಿತದಲ್ಲಿರಿಸಲಾಯಿತು.

[3] ಒಂದು ಉಪವಾಸಕ್ಕೆ ಪರಿಹಾರವಾಗಿ ಒಬ್ಬ ಬಡವನಿಗೆ ಅನ್ನದಾನ ಮಾಡಬೇಕು. ಆದರೆ ಯಾರಾದರೂ ಒಬ್ಬನಿಗಿಂತ ಹೆಚ್ಚು ಬಡವರಿಗೆ ಅನ್ನದಾನ ಮಾಡುವುದಾದರೆ ಅದು ಅವರಿಗೆ ಒಳಿತಾಗಿದೆ.

ಆ ಎಣಿಕೆಯನ್ನು ಪೂರ್ತಿ ಮಾಡಲು, ಅಲ್ಲಾಹು ನಿಮಗೆ ಸನ್ಮಾರ್ಗವನ್ನು ತೋರಿಸಿದ್ದಕ್ಕಾಗಿ ಅವನ ಮಹಾತ್ಮೆಯನ್ನು ಕೊಂಡಾಡಲು ಮತ್ತು ಅವನಿಗೆ ಕೃತಜ್ಞರಾಗಿ ಬದುಕಲು (ಅವನು ಬಯಸುತ್ತಾನೆ).

---

وَإِذَا سَأَلَكَ عِبَادِي عَنِّي فَإِنِّي قَرِيبٌۖ أُجِيبُ
دَعۡوَةَ ٱلدَّاعِ إِذَا دَعَانِۖ فَلۡيَسۡتَجِيبُواْ لِي
وَلۡيُؤۡمِنُواْ بِي لَعَلَّهُمۡ يَرۡشُدُونَ ١٨٦

186. ನನ್ನ ದಾಸರು ನಿಮ್ಮೊಂದಿಗೆ ನನ್ನ ಬಗ್ಗೆ ಕೇಳಿದರೆ ನಾನು ಬಹಳ ಹತ್ತಿರದಲ್ಲಿದ್ದೇನೆ (ಎಂದು ಹೇಳಿರಿ). ಪ್ರಾರ್ಥಿಸುವವನು ನನ್ನನ್ನು ಕರೆದು ಪ್ರಾರ್ಥಿಸಿದರೆ ನಾನು ಅವನ ಪ್ರಾರ್ಥನೆಗೆ ಉತ್ತರ ನೀಡುತ್ತೇನೆ. ಆದ್ದರಿಂದ ಅವರು ನನಗೆ ವಿಧೇಯರಾಗಲಿ ಮತ್ತು ನನ್ನಲ್ಲಿ ವಿಶ್ವಾಸವಿಡಲಿ. ಅವರು ಸನ್ಮಾರ್ಗ ಪಡೆಯುವುದಕ್ಕಾಗಿ.

---

أُحِلَّ لَكُمۡ لَيۡلَةَ ٱلصِّيَامِ ٱلرَّفَثُ إِلَىٰ نِسَآئِكُمۡۚ
هُنَّ لِبَاسٞ لَّكُمۡ وَأَنتُمۡ لِبَاسٞ لَّهُنَّۗ عَلِمَ
ٱللَّهُ أَنَّكُمۡ كُنتُمۡ تَخۡتَانُونَ أَنفُسَكُمۡ فَتَابَ
عَلَيۡكُمۡ وَعَفَا عَنكُمۡۖ فَٱلۡـَٰٔنَ بَٰشِرُوهُنَّ
وَٱبۡتَغُواْ مَا كَتَبَ ٱللَّهُ لَكُمۡۚ وَكُلُواْ وَٱشۡرَبُواْ
حَتَّىٰ يَتَبَيَّنَ لَكُمُ ٱلۡخَيۡطُ ٱلۡأَبۡيَضُ مِنَ ٱلۡخَيۡطِ
ٱلۡأَسۡوَدِ مِنَ ٱلۡفَجۡرِۖ ثُمَّ أَتِمُّواْ ٱلصِّيَامَ إِلَى ٱلَّيۡلِۚ
وَلَا تُبَٰشِرُوهُنَّ وَأَنتُمۡ عَٰكِفُونَ فِي ٱلۡمَسَٰجِدِۗ
تِلۡكَ حُدُودُ ٱللَّهِ فَلَا تَقۡرَبُوهَاۗ كَذَٰلِكَ يُبَيِّنُ
ٱللَّهُ ءَايَٰتِهِۦ لِلنَّاسِ لَعَلَّهُمۡ يَتَّقُونَ ١٨٧

187. ಉಪವಾಸದ ರಾತ್ರಿಯಲ್ಲಿ ನಿಮ್ಮ ಪತ್ನಿಯರೊಂದಿಗೆ ಲೈಂಗಿಕ ಸಂಪರ್ಕ ಮಾಡುವುದನ್ನು ನಿಮಗೆ ಅನುಮತಿಸಲಾಗಿದೆ. ಅವರು ನಿಮ್ಮ ಉಡುಪಾಗಿದ್ದಾರೆ ಮತ್ತು ನೀವು ಅವರ ಉಡುಪಾಗಿದ್ದೀರಿ. ನೀವು ನಿಮ್ಮ ಆತ್ಮಗಳನ್ನು ವಂಚಿಸುತ್ತಿದ್ದೀರಿ ಎಂದು ಅಲ್ಲಾಹನಿಗೆ ತಿಳಿದಿದೆ. ಆದ್ದರಿಂದ, ಅವನು ನಿಮ್ಮ ಪಶ್ಚಾತ್ತಾಪವನ್ನು ಸ್ವೀಕರಿಸಿದ್ದಾನೆ ಮತ್ತು ನಿಮ್ಮನ್ನು ಕ್ಷಮಿಸಿದ್ದಾನೆ. ಈಗ ನೀವು ಅವರೊಂದಿಗೆ ಲೈಂಗಿಕ ಸಂಪರ್ಕವನ್ನು ಮಾಡಬಹುದು ಮತ್ತು ಅಲ್ಲಾಹು ನಿಮಗೆ ವಿಧಿಸಿದ್ದನ್ನು (ಮಕ್ಕಳನ್ನು) ಅರಸಬಹುದು. ಪ್ರಭಾತದ ಬಿಳಿಯ ನೂಲು ಕಪ್ಪು ನೂಲಿನಿಂದ ಸ್ಪಷ್ಟವಾಗಿ ಗೋಚರಿಸುವವರೆಗೆ ತಿನ್ನಿರಿ ಮತ್ತು ಕುಡಿಯಿರಿ. ನಂತರ ರಾತ್ರಿಯ ತನಕ ಉಪವಾಸವನ್ನು ಪೂರ್ತಿಗೊಳಿಸಿರಿ. ಆದರೆ ನೀವು ಮಸೀದಿಗಳಲ್ಲಿ ಧ್ಯಾನ (ಈತಿಕಾಫ್) ನಿರತರಾಗಿರುವಾಗ ಅವರೊಂದಿಗೆ ಲೈಂಗಿಕ ಸಂಪರ್ಕ ಮಾಡಬೇಡಿ. ಇವು ಅಲ್ಲಾಹನ ಎಲ್ಲೆಗಳಾಗಿವೆ. ನೀವು ಅವುಗಳ ಸಮೀಪಕ್ಕೂ ಹೋಗಬೇಡಿ. ಹೀಗೆ ಅಲ್ಲಾಹು ಜನರಿಗೆ ತನ್ನ ನಿಯಮಗಳನ್ನು ವಿವರಿಸಿಕೊಡುತ್ತಿದ್ದಾನೆ. ಅವರು ದೇವಭಯವುಳ್ಳವರಾಗುವುದಕ್ಕಾಗಿ.[1]

---

وَلَا تَأۡكُلُوٓاْ أَمۡوَٰلَكُم بَيۡنَكُم بِٱلۡبَٰطِلِ
وَتُدۡلُواْ بِهَآ إِلَى ٱلۡحُكَّامِ لِتَأۡكُلُواْ فَرِيقٗا مِّنۡ
أَمۡوَٰلِ ٱلنَّاسِ بِٱلۡإِثۡمِ وَأَنتُمۡ تَعۡلَمُونَ ١٨٨

188. ನೀವು ಒಬ್ಬರು ಇನ್ನೊಬ್ಬರ ಆಸ್ತಿಯನ್ನು ಅನ್ಯಾಯವಾಗಿ ತಿನ್ನಬೇಡಿ. ಜನರ ಆಸ್ತಿಯಿಂದ ಏನನ್ನಾದರೂ ಅನ್ಯಾಯವಾಗಿ ಕಬಳಿಸಲು ಆಡಳಿತಗಾರರಿಗೆ ಲಂಚ ತಲುಪಿಸುವುದನ್ನೂ ಮಾಡಬೇಡಿ. (ಅದು ಸರಿಯಲ್ಲವೆಂದು) ನೀವು

---

[1] ಇಸ್ಲಾಮಿನ ಆರಂಭ ಕಾಲದಲ್ಲಿ ಸೂರ್ಯಾಸ್ತದ ವೇಳೆ ಉಪವಾಸ ತೊರೆದರೆ ನಂತರ ಇಶಾ ನಮಾಝಿನ ತನಕ ಅಥವಾ ಮಲಗುವ ತನಕ ಮಾತ್ರ ತಿನ್ನುವುದು, ಕುಡಿಯುವುದು ಮತ್ತು ಲೈಂಗಿಕ ಸಂಪರ್ಕ ಮಾಡುವುದನ್ನು ಅನುಮತಿಸಲಾಗಿತ್ತು. ಮಲಗಿದ ನಂತರ ಇವೆಲ್ಲವೂ ನಿಷಿದ್ಧವಾಗಿದ್ದವು. ಈ ನಿರ್ಬಂಧವು ಕಠಿಣವಾಗಿತ್ತು ಮತ್ತು ಅದನ್ನು ಪಾಲಿಸಲು ಕಷ್ಟವಾಗುತ್ತಿತ್ತು. ಆದ್ದರಿಂದ ಅಲ್ಲಾಹು ಈ ನಿರ್ಬಂಧಗಳನ್ನು ತೆಗೆದುಹಾಕಿ ಪ್ರಭಾತೋದಯದ ತನಕ ತಿನ್ನುವ, ಕುಡಿಯುವ ಮತ್ತು ಲೈಂಗಿಕ ಸಂಪರ್ಕ ಮಾಡುವ ರಿಯಾಯಿತಿಯನ್ನು ನೀಡಿದನು.

ತಿಳಿದವರಾಗಿದ್ದೂ ಸಹ.[1]

**189.** ಅವರು ತಮ್ಮೊಂದಿಗೆ ಚಂದ್ರನ ಬಗ್ಗೆ ಕೇಳುತ್ತಾರೆ. ಹೇಳಿರಿ: "ಅದು ಜನರಿಗೆ (ಅವರ ಆರಾಧನಾ ಸಮಯಗಳನ್ನು ತಿಳಿಯುವ) ಮತ್ತು ಹಜ್ಜ್‌ನ ಸಮಯವನ್ನು ತಿಳಿಯುವ ಸಾಧನವಾಗಿದೆ." ನೀವು ಮನೆಗಳನ್ನು ಹಿಂಭಾಗದಿಂದ ಪ್ರವೇಶಿಸುವುದರಲ್ಲಿ ಒಳಿತಿಲ್ಲ.[2] ಬದಲಿಗೆ, ದೇವಭಯವುಳ್ಳವನೇ ಒಳಿತಿನಲ್ಲಿರುವವನು. ನೀವು ಮನೆಗಳನ್ನು ಅವುಗಳ ಬಾಗಿಲುಗಳಿಂದ ಪ್ರವೇಶಿಸಿ. ಅಲ್ಲಾಹನನ್ನು ಭಯಪಡಿರಿ. ನೀವು ಯಶಸ್ವಿಯಾಗುವುದಕ್ಕಾಗಿ.

يَسۡـَٔلُونَكَ عَنِ ٱلۡأَهِلَّةِۖ قُلۡ هِيَ مَوَٰقِيتُ لِلنَّاسِ وَٱلۡحَجِّۗ وَلَيۡسَ ٱلۡبِرُّ بِأَن تَأۡتُواْ ٱلۡبُيُوتَ مِن ظُهُورِهَا وَلَٰكِنَّ ٱلۡبِرَّ مَنِ ٱتَّقَىٰۗ وَأۡتُواْ ٱلۡبُيُوتَ مِنۡ أَبۡوَٰبِهَاۚ وَٱتَّقُواْ ٱللَّهَ لَعَلَّكُمۡ تُفۡلِحُونَ ١٨٩

**190.** ನಿಮ್ಮ ವಿರುದ್ಧ ಯುದ್ಧ ಮಾಡುವವರೊಡನೆ ಅಲ್ಲಾಹನ ಮಾರ್ಗದಲ್ಲಿ ನೀವು ಕೂಡ ಯುದ್ಧ ಮಾಡಿರಿ. ಆದರೆ ಎಲ್ಲೆ ಮೀರಬೇಡಿ. ನಿಶ್ಚಯವಾಗಿಯೂ ಎಲ್ಲೆ ಮೀರುವವರನ್ನು ಅಲ್ಲಾಹು ಇಷ್ಟಪಡುವುದಿಲ್ಲ.[3]

وَقَٰتِلُواْ فِي سَبِيلِ ٱللَّهِ ٱلَّذِينَ يُقَٰتِلُونَكُمۡ وَلَا تَعۡتَدُوٓاْۚ إِنَّ ٱللَّهَ لَا يُحِبُّ ٱلۡمُعۡتَدِينَ ١٩٠

**191.** ನೀವು ಅವರನ್ನು ಕಂಡಲ್ಲಿ ಕೊಲ್ಲಿರಿ ಮತ್ತು ಅವರು ನಿಮ್ಮನ್ನು ಹೊರಹಾಕಿದ ಸ್ಥಳದಿಂದ ಅವರನ್ನೂ ಹೊರಹಾಕಿರಿ. ಕ್ಷೋಭೆಯು ಕೊಲೆಗಿಂತಲೂ ಘೋರವಾಗಿದೆ. ಮಸ್ಜಿದುಲ್ ಹರಾಮ್‌ನ ಬಳಿ ಅವರು ನಿಮ್ಮೊಂದಿಗೆ ಯುದ್ಧ ಮಾಡುವ ತನಕ ನೀವು ಅವರೊಂದಿಗೆ ಅಲ್ಲಿ ಯುದ್ಧ ಮಾಡಬೇಡಿ. ಅವರು ನಿಮ್ಮೊಂದಿಗೆ ಯುದ್ಧ ಮಾಡಿದರೆ ಅವರನ್ನು ಕೊಲ್ಲಿರಿ. ಈ ರೀತಿ ಸತ್ಯನಿಷೇಧಿಗಳಿಗೆ ಪ್ರತಿಫಲ ನೀಡಲಾಗುತ್ತದೆ.

وَٱقۡتُلُوهُمۡ حَيۡثُ ثَقِفۡتُمُوهُمۡ وَأَخۡرِجُوهُم مِّنۡ حَيۡثُ أَخۡرَجُوكُمۡۚ وَٱلۡفِتۡنَةُ أَشَدُّ مِنَ ٱلۡقَتۡلِۚ وَلَا تُقَٰتِلُوهُمۡ عِندَ ٱلۡمَسۡجِدِ ٱلۡحَرَامِ حَتَّىٰ يُقَٰتِلُوكُمۡ فِيهِۖ فَإِن قَٰتَلُوكُمۡ فَٱقۡتُلُوهُمۡۗ كَذَٰلِكَ جَزَآءُ ٱلۡكَٰفِرِينَ ١٩١

**192.** ಆದರೆ ಅವರೇನಾದರೂ ನಿಲ್ಲಿಸಿದರೆ ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ಕರುಣೆ ತೋರುವವನಾಗಿದ್ದಾನೆ.

فَإِنِ ٱنتَهَوۡاْ فَإِنَّ ٱللَّهَ غَفُورٞ رَّحِيمٞ ١٩٢

**193.** ಕ್ಷೋಭೆ ನಿವಾರಣೆಯಾಗುವ ತನಕ ಮತ್ತು ಧರ್ಮವು

وَقَٰتِلُوهُمۡ حَتَّىٰ لَا تَكُونَ فِتۡنَةٞ وَيَكُونَ

[1] ಒಬ್ಬ ವ್ಯಕ್ತಿ ಇನ್ನೊಬ್ಬನಿಗೆ ಮೋಸ ಮಾಡಿ ಅವನ ಆಸ್ತಿಯನ್ನು ಕಬಳಿಸುತ್ತಾನೆ. ಆದರೆ ಆಸ್ತಿ ಕಳಕೊಂಡವನಿಗೆ ಅವನ ವಿರುದ್ಧ ಯಾವುದೇ ಸಾಕ್ಷ್ಯಾಧಾರಗಳಿರುವುದಿಲ್ಲ. ಆ ಮೋಸಗಾರ ಈ ದೌರ್ಬಲ್ಯವನ್ನು ಸದುಪಯೋಗಪಡಿಸಿ ನ್ಯಾಯಾಲಯದಲ್ಲಿ ತೀರ್ಪು ತನ್ನ ಪರ ಬರುವಂತೆ ನೋಡಿಕೊಳ್ಳುತ್ತಾನೆ. ಹೀಗೆ ಇನ್ನೊಬ್ಬರಿಂದ ಆಸ್ತಿಯನ್ನು ಕಸಿದುಕೊಳ್ಳುವುದು ಪಾಪ ಮತ್ತು ಅನ್ಯಾಯವಾಗಿದೆ. ನ್ಯಾಯಾಲಯದ ತೀರ್ಪು ನಿಷಿದ್ಧವಾದುದನ್ನು ಧರ್ಮಸಮ್ಮತಗೊಳಿಸುವುದಿಲ್ಲ.

[2] ಅಜ್ಞಾನಕಾಲದಲ್ಲಿ ಜನರು ಹಜ್ ಅಥವಾ ಉಮ್ರಕ್ಕೆ ಇಹ್ರಾಂ ಧರಿಸಿದ ನಂತರ ಯಾವುದಾದರೂ ಅಗತ್ಯಕ್ಕಾಗಿ ಮನೆಗೆ ಬರಬೇಕಾಗಿ ಬಂದರೆ ಬಾಗಿಲಿನ ಮೂಲಕ ಒಳ ಬರುತ್ತಿರಲಿಲ್ಲ; ಬದಲಿಗೆ ಗೋಡೆಯಲ್ಲಿ ಕನ್ನ ಕೊರೆದು ಅದರ ಮೂಲಕ ಒಳ ಬರುತ್ತಿದ್ದರು. ಅವರು ಇದನ್ನು ಪುಣ್ಯ ಕಾರ್ಯವೆಂದು ತಿಳಿದಿದ್ದರು.

[3] ಇದು ಮುಸಲ್ಮಾನರಿಗೆ ಯುದ್ಧ ಮಾಡಲು ಅನುಮತಿ ನೀಡುತ್ತಾ ಅವತೀರ್ಣವಾದ ಮೊದಲ ವಚನವಾಗಿದೆ. ಮುಸಲ್ಮಾನರ ವಿರುದ್ಧ ಯುದ್ಧಕ್ಕೆ ಮುಂದಾಗುವವರೊಡನೆ ಯುದ್ಧ ಮಾಡಲು ಈ ವಚನದಲ್ಲಿ ಅನುಮತಿ ನೀಡಲಾಗಿದೆ. ಆದರೆ ಮುಸಲ್ಮಾನರು ಯಾವುದೇ ಕಾರಣಕ್ಕೂ ಎಲ್ಲೆ ಮೀರಬಾರದು. ಎಲ್ಲೆ ಮೀರುವುದೆಂದರೆ ಸತ್ತ ಯೋಧರ ಅಂಗಾಂಗಗಳನ್ನು ವಿರೂಪಗೊಳಿಸುವುದು, ಯುದ್ಧದಲ್ಲಿ ಭಾಗವಹಿಸದ ಮಹಿಳೆಯರು, ಮಕ್ಕಳು ಮತ್ತು ವೃದ್ಧರನ್ನು ಹತ್ಯೆ ಮಾಡುವುದು, ಮರಗಳನ್ನು ಕಡಿಯುವುದು ಅಥವಾ ಸುಡುವುದು, ಪ್ರಾಣಿಗಳನ್ನು ಕೊಲ್ಲುವುದು ಇತ್ಯಾದಿ.

ಅಲ್ಲಾಹನಿಗಾಗುವ ತನಕ ಅವರೊಂದಿಗೆ ಯುದ್ಧ ಮಾಡಿರಿ. ಆದರೆ ಅವರೇನಾದರೂ ನಿಲ್ಲಿಸಿದರೆ, ಮತ್ತೆ ಅಕ್ರಮವೆಸಗಿದವರ ಮೇಲೆಯೇ ಹೊರತು ಇನ್ನಾರ ಮೇಲೂ ಅತಿರೇಕವೆಸಗಬೇಡಿ.

ٱلدِّينُ لِلَّهِۖ فَإِنِ ٱنتَهَوۡاْ فَلَا عُدۡوَٰنَ إِلَّا عَلَى ٱلظَّٰلِمِينَ ١٩٣

---

194. ಪವಿತ್ರ ತಿಂಗಳ ಬದಲಿಗೆ ಪವಿತ್ರ ತಿಂಗಳು. ಪವಿತ್ರವಾದ ಎಲ್ಲವೂ ಅದಲಿ ಬದಲಿಯಾಗಿ ಇರುವುದಾಗಿವೆ. ನಿಮ್ಮ ಮೇಲೆ ಯಾರಾದರೂ ಅತಿರೇಕವೆಸಗಿದರೆ, ಅವನು ನಿಮ್ಮ ಮೇಲೆ ಅತಿರೇಕವೆಸಗಿದಂತೆಯೇ ನೀವು ಅವನ ಮೇಲೆ ಅತಿರೇಕವೆಸಗಿರಿ. ಅಲ್ಲಾಹನನ್ನು ಭಯಪಡಿರಿ. ತಿಳಿಯಿರಿ! ಅಲ್ಲಾಹು ಅವನನ್ನು ಭಯಪಡುವವರ ಜೊತೆಗಿದ್ದಾನೆ.

ٱلشَّهۡرُ ٱلۡحَرَامُ بِٱلشَّهۡرِ ٱلۡحَرَامِ وَٱلۡحُرُمَٰتُ قِصَاصٞۚ فَمَنِ ٱعۡتَدَىٰ عَلَيۡكُمۡ فَٱعۡتَدُواْ عَلَيۡهِ بِمِثۡلِ مَا ٱعۡتَدَىٰ عَلَيۡكُمۡۚ وَٱتَّقُواْ ٱللَّهَ وَٱعۡلَمُوٓاْ أَنَّ ٱللَّهَ مَعَ ٱلۡمُتَّقِينَ ١٩٤

---

195. ಅಲ್ಲಾಹನ ಮಾರ್ಗದಲ್ಲಿ ಖರ್ಚು ಮಾಡಿರಿ. ನಿಮ್ಮ ಕೈಗಳನ್ನು ನೀವೇ ವಿನಾಶಕ್ಕೆ ತಳ್ಳಬೇಡಿ. ಒಳಿತು ಮಾಡಿರಿ. ನಿಶ್ಚಯವಾಗಿಯೂ ಒಳಿತು ಮಾಡುವವರನ್ನು ಅಲ್ಲಾಹು ಪ್ರೀತಿಸುತ್ತಾನೆ.

وَأَنفِقُواْ فِي سَبِيلِ ٱللَّهِ وَلَا تُلۡقُواْ بِأَيۡدِيكُمۡ إِلَى ٱلتَّهۡلُكَةِ وَأَحۡسِنُوٓاْۚ إِنَّ ٱللَّهَ يُحِبُّ ٱلۡمُحۡسِنِينَ ١٩٥

---

196. ಅಲ್ಲಾಹನಿಗಾಗಿ ಹಜ್ಜ್ ಮತ್ತು ಉಮ್ರಗಳನ್ನು ಪೂರ್ತಿಗೊಳಿಸಿರಿ. ನಿಮ್ಮನ್ನು (ದಾರಿ ಮಧ್ಯೆ) ತಡೆಯಲಾದರೆ ನಿಮಗೆ ಸುಲಭವಾಗಿರುವ ಒಂದು ಪ್ರಾಣಿಯನ್ನು ಬಲಿ ನೀಡಿರಿ.[1] ಬಲಿಮೃಗವು ಅದರ ಸ್ಥಳವನ್ನು ತಲುಪುವ ತನಕ ಕೇಶಮುಂಡನ ಮಾಡಬೇಡಿ. ನಿಮ್ಮಲ್ಲಿ ಯಾರಾದರೂ ಅನಾರೋಗ್ಯದಲ್ಲಿದ್ದು ಅಥವಾ ತಲೆಯಲ್ಲಿ ಏನಾದರೂ ತೊಂದರೆಯಿದ್ದು, (ಕೇಶ ಮುಂಡನ ಮಾಡಿದ್ದರೆ) ಅದಕ್ಕೆ ಪರಿಹಾರವಾಗಿ ಉಪವಾಸ ಅಥವಾ ದಾನಧರ್ಮ ಅಥವಾ ಬಲಿಕರ್ಮ ನಿರ್ವಹಿಸಲಿ. ಆದರೆ ನೀವು ನಿರ್ಭಯ ಸ್ಥಿತಿಯಲ್ಲಿದ್ದು, ನಿಮ್ಮಲ್ಲಿ ಯಾರಾದರೂ ಉಮ್ರಾ ನಿರ್ವಹಿಸಿ ಹಜ್ಜ್ ತನಕ ವಿಶ್ರಾಂತಿ ಪಡೆದರೆ, ಅವನು ಸುಲಭವಾಗಿರುವ ಒಂದು ಪ್ರಾಣಿಯನ್ನು ಬಲಿ ನೀಡಲಿ. ಯಾರಿಗೆ ಬಲಿಮೃಗ ಸಿಗುವುದಿಲ್ಲವೋ ಅವನು ಹಜ್ಜ್‌ನ ಸಮಯದಲ್ಲಿ ಮೂರು ದಿನ ಮತ್ತು (ಊರಿಗೆ) ಮರಳಿದ ಬಳಿಕ ಏಳು ದಿನ; ಒಟ್ಟು ಹತ್ತು ದಿನ ಉಪವಾಸ ಆಚರಿಸಲಿ. ಈ ನಿಯಮವಿರುವುದು ಮಸ್ಜಿದುಲ್ ಹರಾಮ್‌ನ ನಿವಾಸಿಗಳಲ್ಲದವರಿಗೆ ಮಾತ್ರ. ಅಲ್ಲಾಹನನ್ನು ಭಯಪಡಿರಿ. ತಿಳಿಯಿರಿ! ಅಲ್ಲಾಹು ಅತಿ ಕಠೋರವಾಗಿ ಶಿಕ್ಷಿಸುವವನಾಗಿದ್ದಾನೆ.

وَأَتِمُّواْ ٱلۡحَجَّ وَٱلۡعُمۡرَةَ لِلَّهِۚ فَإِنۡ أُحۡصِرۡتُمۡ فَمَا ٱسۡتَيۡسَرَ مِنَ ٱلۡهَدۡيِۖ وَلَا تَحۡلِقُواْ رُءُوسَكُمۡ حَتَّىٰ يَبۡلُغَ ٱلۡهَدۡيُ مَحِلَّهُۥۚ فَمَن كَانَ مِنكُم مَّرِيضًا أَوۡ بِهِۦٓ أَذٗى مِّن رَّأۡسِهِۦ فَفِدۡيَةٞ مِّن صِيَامٍ أَوۡ صَدَقَةٍ أَوۡ نُسُكٖۚ فَإِذَآ أَمِنتُمۡ فَمَن تَمَتَّعَ بِٱلۡعُمۡرَةِ إِلَى ٱلۡحَجِّ فَمَا ٱسۡتَيۡسَرَ مِنَ ٱلۡهَدۡيِۚ فَمَن لَّمۡ يَجِدۡ فَصِيَامُ ثَلَٰثَةِ أَيَّامٖ فِي ٱلۡحَجِّ وَسَبۡعَةٍ إِذَا رَجَعۡتُمۡۗ تِلۡكَ عَشَرَةٞ كَامِلَةٞۗ ذَٰلِكَ لِمَن لَّمۡ يَكُنۡ أَهۡلُهُۥ حَاضِرِي ٱلۡمَسۡجِدِ ٱلۡحَرَامِۚ وَٱتَّقُواْ ٱللَّهَ وَٱعۡلَمُوٓاْ أَنَّ ٱللَّهَ شَدِيدُ ٱلۡعِقَابِ ١٩٦

---

[1] ದಾರಿ ಮಧ್ಯೆ ಶತ್ರುಗಳು ನಿಮ್ಮನ್ನು ತಡೆದರೆ, ಅಥವಾ ತೀವ್ರ ಅನಾರೋಗ್ಯದಿಂದಾಗಿ ಪ್ರಯಾಣ ಮುಂದುವರಿಸಲು ನಿಮಗೆ ಸಾಧ್ಯವಾಗದೆ ಹೋದರೆ, ಬಲಿಮೃಗವನ್ನು ಬಲಿ ನೀಡಿ, ಕೇಶ ಮುಂಡನ ಮಾಡಿ ಇಹ್ರಾಮ್‌ನಿಂದ ಮುಕ್ತರಾಗಬಹುದು.

197. ಹಜ್ಜ್ ಪರಿಚಿತ ತಿಂಗಳುಗಳಲ್ಲಾಗಿದೆ.[1] ಆದ್ದರಿಂದ ಯಾರಾದರೂ ಆ ತಿಂಗಳುಗಳಲ್ಲಿ (ಇಹ್ರಾಮ್ ಧರಿಸಿ) ಹಜ್ಜ್ ನಿರ್ವಹಿಸುವುದನ್ನು ಕಡ್ಡಾಯಗೊಳಿಸಿದರೆ, ಅವನು ಹಜ್ಜ್‌ನ ಸಮಯದಲ್ಲಿ ಲೈಂಗಿಕ ಸಂಪರ್ಕ, ದುಷ್ಕರ್ಮ ಮತ್ತು ತರ್ಕ ಮಾಡಬಾರದು. ನೀವು ಏನೇ ಸತ್ಕರ್ಮ ಮಾಡಿದರೂ ಅಲ್ಲಾಹು ಅದನ್ನು ತಿಳಿಯುತ್ತಾನೆ. ನೀವು (ಹಜ್ಜ್ ಯಾತ್ರೆಗಾಗಿ) ಸಿದ್ಧತೆ ಮಾಡಿಕೊಳ್ಳಿರಿ. ನಿಶ್ಚಯವಾಗಿಯೂ ನೀವು ಮಾಡಿಕೊಳ್ಳುವ ಸಿದ್ಧತೆಗಳಲ್ಲಿ ದೇವಭಯವು ಅತಿಶ್ರೇಷ್ಠ- ವಾಗಿದೆ. ಓ ಬುದ್ಧಿವಂತರೇ! ನೀವು ನನ್ನನ್ನು ಭಯಪಡಿರಿ.

ٱلۡحَجُّ أَشۡهُرٞ مَّعۡلُومَٰتٞۚ فَمَن فَرَضَ فِيهِنَّ ٱلۡحَجَّ
فَلَا رَفَثَ وَلَا فُسُوقَ وَلَا جِدَالَ فِي ٱلۡحَجِّۗ وَمَا
تَفۡعَلُواْ مِنۡ خَيۡرٖ يَعۡلَمۡهُ ٱللَّهُۗ وَتَزَوَّدُواْ فَإِنَّ خَيۡرَ
ٱلزَّادِ ٱلتَّقۡوَىٰۖ وَٱتَّقُونِ يَٰٓأُوْلِي ٱلۡأَلۡبَٰبِ ١٩٧

198. ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಯಾವುದೇ ಔದಾರ್ಯವನ್ನು ಅರಸುವುದರಲ್ಲಿ ನಿಮಗೆ ದೋಷವಿಲ್ಲ. ನೀವು ಅರಫಾತ್‌ನಿಂದ ತೆರಳಿದರೆ ಮಶ್‌ಅರುಲ್ ಹರಾಮ್‌ನ ಬಳಿ ಅಲ್ಲಾಹನನ್ನು ಸ್ಮರಿಸಿರಿ. ಅವನು ನಿಮಗೆ ಸನ್ಮಾರ್ಗ ತೋರಿಸಿದಂತೆಯೇ ನೀವು ಅವನನ್ನು ಸ್ಮರಿಸಿರಿ. ವಾಸ್ತವವಾಗಿ, ಇದಕ್ಕೆ ಮುಂಚೆ ನೀವು ದಾರಿ ತಪ್ಪಿದವರಾಗಿದ್ದಿರಿ.

لَيۡسَ عَلَيۡكُمۡ جُنَاحٌ أَن تَبۡتَغُواْ فَضۡلٗا مِّن
رَّبِّكُمۡۚ فَإِذَآ أَفَضۡتُم مِّنۡ عَرَفَٰتٖ فَٱذۡكُرُواْ ٱللَّهَ
عِندَ ٱلۡمَشۡعَرِ ٱلۡحَرَامِۖ وَٱذۡكُرُوهُ كَمَا هَدَىٰكُمۡ
وَإِن كُنتُم مِّن قَبۡلِهِۦ لَمِنَ ٱلضَّآلِّينَ ١٩٨

199. ನಂತರ ಜನರು ಎಲ್ಲಿಂದ ಹೊರಡುತ್ತಾರೋ ಅಲ್ಲಿಂದ ನೀವೂ ಹೊರಡಿರಿ. ಅಲ್ಲಾಹನಲ್ಲಿ ಕ್ಷಮೆಯಾಚಿಸಿರಿ. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ಕರುಣೆ ತೋರುವವನಾಗಿದ್ದಾನೆ.

ثُمَّ أَفِيضُواْ مِنۡ حَيۡثُ أَفَاضَ ٱلنَّاسُ
وَٱسۡتَغۡفِرُواْ ٱللَّهَۚ إِنَّ ٱللَّهَ غَفُورٞ رَّحِيمٞ ١٩٩

200. ನೀವು ಹಜ್ಜ್ ಕರ್ಮಗಳನ್ನು ಪೂರ್ತಿಸಿದರೆ, ನಿಮ್ಮ ಪೂರ್ವಜರನ್ನು ಸ್ಮರಿಸುವಂತೆಯೇ ಅಥವಾ ಅದಕ್ಕಿಂತಲೂ ತೀವ್ರವಾಗಿ ಅಲ್ಲಾಹನನ್ನು ಸ್ಮರಿಸಿರಿ. ಜನರಲ್ಲಿ ಕೆಲವರು ಹೇಳುತ್ತಾರೆ: "ಓ ನಮ್ಮ ಪರಿಪಾಲಕನೇ! ನಮಗೆ ಇಹಲೋಕದಲ್ಲಿ ದಯಪಾಲಿಸು." ಅಂತಹವರಿಗೆ ಪರಲೋಕದಲ್ಲಿ ಯಾವುದೇ ಪಾಲಿಲ್ಲ.

فَإِذَا قَضَيۡتُم مَّنَٰسِكَكُمۡ فَٱذۡكُرُواْ ٱللَّهَ
كَذِكۡرِكُمۡ ءَابَآءَكُمۡ أَوۡ أَشَدَّ ذِكۡرٗاۗ فَمِنَ ٱلنَّاسِ
مَن يَقُولُ رَبَّنَآ ءَاتِنَا فِي ٱلدُّنۡيَا وَمَا لَهُۥ فِي
ٱلۡأٓخِرَةِ مِنۡ خَلَٰقٖ ٢٠٠

201. ಇತರ ಕೆಲವರು ಹೇಳುತ್ತಾರೆ: "ಓ ನಮ್ಮ ಪರಿಪಾಲಕನೇ! ನಮಗೆ ಇಹಲೋಕದಲ್ಲಿ ಒಳಿತನ್ನು ದಯಪಾಲಿಸು ಮತ್ತು ಪರಲೋಕದಲ್ಲೂ ಒಳಿತನ್ನು ದಯಪಾಲಿಸು ಮತ್ತು ನಮ್ಮನ್ನು ನರಕ ಶಿಕ್ಷೆಯಿಂದ ಪಾರು ಮಾಡು."

وَمِنۡهُم مَّن يَقُولُ رَبَّنَآ ءَاتِنَا فِي ٱلدُّنۡيَا حَسَنَةٗ
وَفِي ٱلۡأٓخِرَةِ حَسَنَةٗ وَقِنَا عَذَابَ ٱلنَّارِ ٢٠١

202. ಅವರಿಗೆ ಅವರು ಮಾಡಿದ ಕರ್ಮಗಳ ಪಾಲಿದೆ. ಅಲ್ಲಾಹು ಶೀಘ್ರವಾಗಿ ವಿಚಾರಣೆ ಮಾಡುವವನಾಗಿದ್ದಾನೆ.

أُوْلَٰٓئِكَ لَهُمۡ نَصِيبٞ مِّمَّا كَسَبُواْۚ وَٱللَّهُ سَرِيعُ
ٱلۡحِسَابِ ٢٠٢

203. ಬೆರಳೆಣಿಕೆಯ ಕೆಲವು ದಿನಗಳಲ್ಲಿ[2] ಅಲ್ಲಾಹನನ್ನು ಸ್ಮರಿಸಿರಿ.

وَٱذۡكُرُواْ ٱللَّهَ فِيٓ أَيَّامٖ مَّعۡدُودَٰتٖۚ فَمَن تَعَجَّلَ

[1] ಪರಿಚಿತ ತಿಂಗಳುಗಳು ಎಂದರೆ ಶವ್ವಾಲ್ ಮತ್ತು ದುಲ್-ಕಅದ ತಿಂಗಳುಗಳು ಮತ್ತು ದುಲ್-ಹಿಜ್ಜ ತಿಂಗಳ ಮೊದಲ ಹತ್ತು ದಿನಗಳು.

[2] ಬೆರಳೆಣಿಕೆಯ ದಿನಗಳು ಎಂದರೆ ಅಯ್ಯಾಮು ತ್ತಶ್ರೀಕ್ (ದುಲ್-ಹಿಜ್ಜ ತಿಂಗಳ 11, 12 ಮತ್ತು 13ನೇ ದಿನಗಳು).

ಯಾರಾದರೂ ಎರಡೇ ದಿನಗಳಲ್ಲಿ ತರಾತುರಿಯಿಂದ ಹೊರಟರೆ ಅವರಿಗೆ ದೋಷವಿಲ್ಲ.[1] ಯಾರಾದರೂ ವಿಳಂಬ ಮಾಡಿದರೆ ಅವರಿಗೂ ದೋಷವಿಲ್ಲ. ಇದು ದೇವಭಯವುಳ್ಳವರಿಗಾಗಿದೆ. ಅಲ್ಲಾಹನನ್ನು ಭಯಪಡಿರಿ. ತಿಳಿಯಿರಿ! ನಿಮ್ಮೆಲ್ಲರನ್ನೂ ಅವನ ಬಳಿಗೇ ಒಟ್ಟುಗೂಡಿಸಲಾಗುತ್ತದೆ.

فِي يَوۡمَيۡنِ فَلَآ إِثۡمَ عَلَيۡهِ وَمَن تَأَخَّرَ فَلَآ إِثۡمَ عَلَيۡهِۖ لِمَنِ ٱتَّقَىٰۗ وَٱتَّقُواْ ٱللَّهَ وَٱعۡلَمُوٓاْ أَنَّكُمۡ إِلَيۡهِ تُحۡشَرُونَ ﴿٢٠٣﴾

---

204. ಜನರಲ್ಲಿ ಕೆಲವರಿದ್ದಾರೆ. ಅವರಲ್ಲೊಬ್ಬನು ಇಹಲೋಕದ ಕುರಿತು ಹೇಳುವ ಮಾತುಗಳು ನಿಮ್ಮನ್ನು ಆಶ್ಚರ್ಯಗೊಳಿಸ-ಬಹುದು. ಅವನು ತನ್ನ ಹೃದಯದಲ್ಲಿರುವುದಕ್ಕೆ ಅಲ್ಲಾಹನನ್ನು ಸಾಕ್ಷಿಯಾಗಿ ಮಾಡುತ್ತಾನೆ. ವಾಸ್ತವವಾಗಿ, ಅವನ ಮಹಾ ಜಗಳಗಂಟಿಯಾಗಿದ್ದಾನೆ.

وَمِنَ ٱلنَّاسِ مَن يُعۡجِبُكَ قَوۡلُهُۥ فِي ٱلۡحَيَوٰةِ ٱلدُّنۡيَا وَيُشۡهِدُ ٱللَّهَ عَلَىٰ مَا فِي قَلۡبِهِۦ وَهُوَ أَلَدُّ ٱلۡخِصَامِ ﴿٢٠٤﴾

---

205. ಅವನು ಮರಳಿ ಹೋಗುವಾಗ, ಭೂಮಿಯಲ್ಲಿ ಕಿಡಿಗೇಡಿತನ ಮಾಡಲು ಮತ್ತು ಹೊಲಗಳನ್ನು ಹಾಗೂ ವಂಶಗಳನ್ನು ನಾಶ ಮಾಡಲು ಶ್ರಮಿಸುತ್ತಾನೆ. ಅಲ್ಲಾಹು ಕಿಡಿಗೇಡಿತನವನ್ನು ಇಷ್ಟಪಡುವುದಿಲ್ಲ.

وَإِذَا تَوَلَّىٰ سَعَىٰ فِي ٱلۡأَرۡضِ لِيُفۡسِدَ فِيهَا وَيُهۡلِكَ ٱلۡحَرۡثَ وَٱلنَّسۡلَۚ وَٱللَّهُ لَا يُحِبُّ ٱلۡفَسَادَ ﴿٢٠٥﴾

---

206. "ಅಲ್ಲಾಹನನ್ನು ಭಯಪಡು" ಎಂದು ಅವನೊಡನೆ ಹೇಳಲಾದರೆ, ಪ್ರತಿಷ್ಠೆಯು ಅವನನ್ನು ಪಾಪಕ್ಕೆ ಎಳೆಯುತ್ತದೆ. ಅವನಿಗೆ ನರಕವೇ ಸಾಕು. ಆ ವಾಸಸ್ಥಳವು ಬಹಳ ನಿಕೃಷ್ಟವಾಗಿದೆ.

وَإِذَا قِيلَ لَهُ ٱتَّقِ ٱللَّهَ أَخَذَتۡهُ ٱلۡعِزَّةُ بِٱلۡإِثۡمِۚ فَحَسۡبُهُۥ جَهَنَّمُۖ وَلَبِئۡسَ ٱلۡمِهَادُ ﴿٢٠٦﴾

---

207. ಅಲ್ಲಾಹನ ಸಂಪ್ರೀತಿಯನ್ನು ಅರಸುತ್ತಾ ತಮ್ಮ ದೇಹವನ್ನೇ ಮಾರುವ ಜನರೂ ಇದ್ದಾರೆ. ಅಲ್ಲಾಹು ತನ್ನ ದಾಸರೊಂದಿಗೆ ದಯೆಯುಳ್ಳವನಾಗಿದ್ದಾನೆ.

وَمِنَ ٱلنَّاسِ مَن يَشۡرِي نَفۡسَهُ ٱبۡتِغَآءَ مَرۡضَاتِ ٱللَّهِۚ وَٱللَّهُ رَءُوفُۢ بِٱلۡعِبَادِ ﴿٢٠٧﴾

---

208. ಓ ಸತ್ಯವಿಶ್ವಾಸಿಗಳೇ! ನೀವು ಇಸ್ಲಾಂ ಧರ್ಮದಲ್ಲಿ ಪೂರ್ಣವಾಗಿ ಪ್ರವೇಶಿಸಿರಿ. ಶೈತಾನನ ಹೆಜ್ಜೆಗಳನ್ನು ಹಿಂಬಾಲಿಸಬೇಡಿ. ನಿಶ್ಚಯವಾಗಿಯೂ ಅವನು ನಿಮ್ಮ ಪ್ರತ್ಯಕ್ಷ ವೈರಿಯಾಗಿದ್ದಾನೆ.

يَـٰٓأَيُّهَا ٱلَّذِينَ ءَامَنُواْ ٱدۡخُلُواْ فِي ٱلسِّلۡمِ كَآفَّةٗ وَلَا تَتَّبِعُواْ خُطُوَٰتِ ٱلشَّيۡطَٰنِۚ إِنَّهُۥ لَكُمۡ عَدُوّٞ مُّبِينٞ ﴿٢٠٨﴾

---

209. ನಿಮಗೆ ಸ್ಪಷ್ಟ ಸಾಕ್ಷ್ಯಾಧಾರಗಳು ತಲುಪಿದ ಬಳಿಕವೂ ನೀವು ತಪ್ಪಿ ನಡೆದರೆ, ತಿಳಿಯಿರಿ! ನಿಶ್ಚಯವಾಗಿಯೂ ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

فَإِن زَلَلۡتُم مِّنۢ بَعۡدِ مَا جَآءَتۡكُمُ ٱلۡبَيِّنَٰتُ فَٱعۡلَمُوٓاْ أَنَّ ٱللَّهَ عَزِيزٌ حَكِيمٌ ﴿٢٠٩﴾

---

210. ಅಲ್ಲಾಹು ಮತ್ತು ದೇವದೂತರು ಮೋಡಗಳ ನೆರಳುಗಳಲ್ಲಿ ಅವರ ಬಳಿಗೆ ಬರುವುದನ್ನು ಮತ್ತು ವಿಷಯವು ತೀರ್ಮಾನಿಸಿ ಬಿಡಲಾಗುವುದನ್ನು ಅವರು ಕಾಯುತ್ತಿದ್ದಾರೆಯೇ?

هَلۡ يَنظُرُونَ إِلَّآ أَن يَأۡتِيَهُمُ ٱللَّهُ فِي ظُلَلٖ مِّنَ ٱلۡغَمَامِ وَٱلۡمَلَـٰٓئِكَةُ وَقُضِيَ ٱلۡأَمۡرُۚ وَإِلَى ٱللَّهِ تُرۡجَعُ ٱلۡأُمُورُ ﴿٢١٠﴾

---

[1] ಮಿನಾದಲ್ಲಿ ಮೂರು ದಿನ ತಂಗಿ ಜಮ್ರಗಳಿಗೆ ಕಲ್ಲೆಸೆಯುವುದು ಶ್ರೇಷ್ಠವಾಗಿದೆ. ಆದರೆ ಯಾರಾದರೂ ಎರಡೇ ದಿನಗಳಲ್ಲಿ ಮಿನಾದಿಂದ ಹೊರಟರೆ ಅದರಲ್ಲೇನೂ ತೊಂದರೆಯಿಲ್ಲ.

ವಿಷಯಗಳೆಲ್ಲವೂ ಅಲ್ಲಾಹನ ಬಳಿಗೇ ಮರಳುತ್ತವೆ.

---

211. ಇಸ್ರಾಯೇಲ್ ಮಕ್ಕಳೊಡನೆ ನಾವು ಅವರಿಗೆ ಎಷ್ಟೆಷ್ಟು ಸ್ಪಷ್ಟ ದೃಷ್ಟಾಂತಗಳನ್ನು ನೀಡಿದ್ದೇವೆಂದು ಕೇಳಿರಿ. ಅಲ್ಲಾಹನ ಅನುಗ್ರಹವು ತನ್ನ ಬಳಿಗೆ ಬಂದ ಬಳಿಕವೂ ಅದನ್ನು ಬದಲಾಯಿಸುವವನು ಯಾರೋ—ನಿಶ್ಚಯವಾಗಿಯೂ ಅಲ್ಲಾಹು ಅತಿಕಠೋರವಾಗಿ ಶಿಕ್ಷಿಸುವವನೆಂದು (ಅವನು ತಿಳಿದುಕೊಳ್ಳಲಿ).

سَلۡ بَنِيٓ إِسۡرَٰٓءِيلَ كَمۡ ءَاتَيۡنَٰهُم مِّنۡ ءَايَةِۭ بَيِّنَةٖۗ وَمَن يُبَدِّلۡ نِعۡمَةَ ٱللَّهِ مِنۢ بَعۡدِ مَا جَآءَتۡهُ فَإِنَّ ٱللَّهَ شَدِيدُ ٱلۡعِقَابِ ٢١١

---

212. ಸತ್ಯನಿಷೇಧಿಗಳಿಗೆ ಇಹಲೋಕ ಜೀವನವನ್ನು ಅಲಂಕರಿಸಿಕೊಡಲಾಗಿದೆ. ಅವರು ಸತ್ಯವಿಶ್ವಾಸಿಗಳನ್ನು ತಮಾಷೆ ಮಾಡುತ್ತಾರೆ. ಆದರೆ, ಪುನರುತ್ಥಾನ ದಿನದಂದು ದೇವಭಯವುಳ್ಳವರು ಅವರಿಗಿಂತ ಮೇಲಿರುತ್ತಾರೆ. ಅಲ್ಲಾಹು ಅವನು ಇಚ್ಛಿಸಿದವರಿಗೆ ಲೆಕ್ಕವಿಲ್ಲದೆ ನೀಡುತ್ತಾನೆ.

زُيِّنَ لِلَّذِينَ كَفَرُواْ ٱلۡحَيَوٰةُ ٱلدُّنۡيَا وَيَسۡخَرُونَ مِنَ ٱلَّذِينَ ءَامَنُواْۘ وَٱلَّذِينَ ٱتَّقَوۡاْ فَوۡقَهُمۡ يَوۡمَ ٱلۡقِيَٰمَةِۗ وَٱللَّهُ يَرۡزُقُ مَن يَشَآءُ بِغَيۡرِ حِسَابٖ ٢١٢

---

213. ಮಾನವರೆಲ್ಲರೂ ಒಂದೇ ಸಮುದಾಯವಾಗಿದ್ದರು. ನಂತರ ಅಲ್ಲಾಹು ಸುವಾರ್ತೆ ತಿಳಿಸಲು ಮತ್ತು ಎಚ್ಚರಿಕೆ ನೀಡಲು ಪ್ರವಾದಿಗಳನ್ನು ಕಳುಹಿಸಿದನು. ಜನರು ಭಿನ್ನಾಭಿಪ್ರಾಯ ತಳೆದ ವಿಷಯದಲ್ಲಿ ತೀರ್ಪು ನೀಡುವುದಕ್ಕಾಗಿ ಅವರ ಜೊತೆಗೆ ಗ್ರಂಥವನ್ನು ಸತ್ಯ ಸಮೇತ ಅವತೀರ್ಣಗೊಳಿಸಿದನು. ಆದರೆ ಗ್ರಂಥ ನೀಡಲಾದ ಅದೇ ಜನರು ಸ್ಪಷ್ಟ ಸಾಕ್ಷ್ಯಾಧಾರಗಳು ತಮಗೆ ತಲುಪಿದ ಬಳಿಕವೂ ತಮ್ಮೊಳಗಿನ ವಿದ್ವೇಷದ ನಿಮಿತ್ತ ಅದರ (ಗ್ರಂಥದ) ವಿಷಯದಲ್ಲಿ ಭಿನ್ನಮತ ತಳೆದರು. ಆದ್ದರಿಂದ ಅಲ್ಲಾಹು ತನ್ನ ಅಪ್ಪಣೆ ಪ್ರಕಾರ ಅವರು ಭಿನ್ನಮತೀಯರಾದ ಆ ಸತ್ಯಕ್ಕೆ ಸತ್ಯವಿಶ್ವಾಸಿಗಳನ್ನು ಮುನ್ನಡೆಸಿದನು. ಅಲ್ಲಾಹು ಅವನು ಇಚ್ಛಿಸಿದವರನ್ನು ನೇರಮಾರ್ಗಕ್ಕೆ ಮುನ್ನಡೆಸುತ್ತಾನೆ.

كَانَ ٱلنَّاسُ أُمَّةٗ وَٰحِدَةٗ فَبَعَثَ ٱللَّهُ ٱلنَّبِيِّـۧنَ مُبَشِّرِينَ وَمُنذِرِينَ وَأَنزَلَ مَعَهُمُ ٱلۡكِتَٰبَ بِٱلۡحَقِّ لِيَحۡكُمَ بَيۡنَ ٱلنَّاسِ فِيمَا ٱخۡتَلَفُواْ فِيهِۚ وَمَا ٱخۡتَلَفَ فِيهِ إِلَّا ٱلَّذِينَ أُوتُوهُ مِنۢ بَعۡدِ مَا جَآءَتۡهُمُ ٱلۡبَيِّنَٰتُ بَغۡيَۢا بَيۡنَهُمۡۖ فَهَدَى ٱللَّهُ ٱلَّذِينَ ءَامَنُواْ لِمَا ٱخۡتَلَفُواْ فِيهِ مِنَ ٱلۡحَقِّ بِإِذۡنِهِۦۗ وَٱللَّهُ يَهۡدِي مَن يَشَآءُ إِلَىٰ صِرَٰطٖ مُّسۡتَقِيمٍ ٢١٣

---

214. ನಿಮಗಿಂತ ಮೊದಲಿನವರಿಗೆ ಬಂದಂತಹ ಪರೀಕ್ಷೆಗಳು ನಿಮಗೂ ಬಾರದೆ ನಿರಾಯಾಸವಾಗಿ ಸ್ವರ್ಗವನ್ನು ಪ್ರವೇಶಿಸಿ ಬಿಡಬಹುದೆಂದು ನೀವು ಭಾವಿಸಿದ್ದೀರಾ? ಅವರಿಗೆ ಬಡತನ ಮತ್ತು ಕಷ್ಟಗಳು ಎರಗಿದ್ದವು. ಅಲ್ಲಾಹನ ಸಹಾಯ ಬರುವುದು ಯಾವಾಗ ಎಂದು ಸಂದೇಶವಾಹಕರು ಮತ್ತು ಅವರ ಜೊತೆಯಲ್ಲಿದ್ದ ಸತ್ಯವಿಶ್ವಾಸಿಗಳು ಕೇಳುವವರೆಗೆ ಅವರನ್ನು ನಡುಗಿಸಲಾಯಿತು. ತಿಳಿಯಿರಿ! ಅಲ್ಲಾಹನ ಸಹಾಯವು ಹತ್ತಿರದಲ್ಲೇ ಇದೆ.

أَمۡ حَسِبۡتُمۡ أَن تَدۡخُلُواْ ٱلۡجَنَّةَ وَلَمَّا يَأۡتِكُم مَّثَلُ ٱلَّذِينَ خَلَوۡاْ مِن قَبۡلِكُمۖ مَّسَّتۡهُمُ ٱلۡبَأۡسَآءُ وَٱلضَّرَّآءُ وَزُلۡزِلُواْ حَتَّىٰ يَقُولَ ٱلرَّسُولُ وَٱلَّذِينَ ءَامَنُواْ مَعَهُۥ مَتَىٰ نَصۡرُ ٱللَّهِۗ أَلَآ إِنَّ نَصۡرَ ٱللَّهِ قَرِيبٞ ٢١٤

---

215. ಅವರು ಏನು ಖರ್ಚು ಮಾಡಬೇಕೆಂದು ಅವರು

يَسۡـَٔلُونَكَ مَاذَا يُنفِقُونَۖ قُلۡ مَآ أَنفَقۡتُم

ನಿಮ್ಮೊಡನೆ ಕೇಳುತ್ತಾರೆ. ಹೇಳಿರಿ: "ನೀವು ಒಳಿತಾಗಿರುವ ಏನು ಖರ್ಚು ಮಾಡುವುದಾದರೂ ಅದು ಮಾತಾಪಿತರಿಗೆ, ಹತ್ತಿರದ ಸಂಬಂಧಿಕರಿಗೆ, ಅನಾಥರಿಗೆ, ನಿರ್ಗತಿಕರಿಗೆ ಮತ್ತು ದಾರಿಹೋಕರಿಗೆ ಖರ್ಚು ಮಾಡಿರಿ. ನೀವು ಏನೇ ಒಳಿತು ಮಾಡಿದರೂ ನಿಶ್ಚಯವಾಗಿಯೂ ಅಲ್ಲಾಹು ಅದನ್ನು ತಿಳಿಯುತ್ತಾನೆ."

مِّنْ خَيْرٍ فَلِلْوَٰلِدَيْنِ وَٱلْأَقْرَبِينَ وَٱلْيَتَٰمَىٰ
وَٱلْمَسَٰكِينِ وَٱبْنِ ٱلسَّبِيلِ ۗ وَمَا تَفْعَلُوا۟ مِنْ خَيْرٍ
فَإِنَّ ٱللَّهَ بِهِۦ عَلِيمٌ ﴿٢١٥﴾

---

216. ನಿಮಗೆ ಅಸಹ್ಯವೆನಿಸಿದರೂ ಸಹ ನಿಮ್ಮ ಮೇಲೆ ಯುದ್ಧವನ್ನು ಕಡ್ಡಾಯಗೊಳಿಸಲಾಗಿದೆ. ಬಹುಶಃ ನಿಮಗೊಂದು ವಿಷಯವು ಅಸಹ್ಯವೆನಿಸಿದರೂ ಅದು ನಿಮಗೆ ಒಳಿತಾಗಿರಬಹುದು. ಹಾಗೆಯೇ, ನಿಮಗೊಂದು ವಿಷಯವು ಇಷ್ಟವಾಗಿದ್ದರೂ ಅದು ನಿಮಗೆ ಕೆಡುಕಾಗಿರಬಹುದು. ಅಲ್ಲಾಹು ತಿಳಿದಿದ್ದಾನೆ; ಆದರೆ ನೀವು ತಿಳಿದಿಲ್ಲ.

كُتِبَ عَلَيْكُمُ ٱلْقِتَالُ وَهُوَ كُرْهٌ لَّكُمْ ۖ
وَعَسَىٰٓ أَن تَكْرَهُوا۟ شَيْـًٔا وَهُوَ خَيْرٌ لَّكُمْ ۖ
وَعَسَىٰٓ أَن تُحِبُّوا۟ شَيْـًٔا وَهُوَ شَرٌّ لَّكُمْ ۗ وَٱللَّهُ
يَعْلَمُ وَأَنتُمْ لَا تَعْلَمُونَ ﴿٢١٦﴾

---

217. ನಿಷೇಧಿತ ತಿಂಗಳಲ್ಲಿ ಯುದ್ಧ ಮಾಡುವುದರ ಕುರಿತು ಅವರು ನಿಮ್ಮಲ್ಲಿ ವಿಚಾರಿಸುತ್ತಾರೆ. ಹೇಳಿರಿ: "ಅದರಲ್ಲಿ ಯುದ್ಧ ಮಾಡುವುದು ಮಹಾ ಅಪರಾಧವಾಗಿದೆ." ಆದರೆ ಅಲ್ಲಾಹನ ಮಾರ್ಗದಿಂದ (ಜನರನ್ನು) ತಡೆಯುವುದು, ಅವನನ್ನು ನಿಷೇಧಿಸುವುದು, ಮಸ್ಜಿದುಲ್ ಹರಾಮ್‌ನಿಂದ (ಜನರನ್ನು) ತಡೆಯುವುದು ಮತ್ತು ಅದರ ನಿವಾಸಿಗಳನ್ನು ಅಲ್ಲಿಂದ ಹೊರಹಾಕುವುದು ಅಲ್ಲಾಹನ ದೃಷ್ಟಿಯಲ್ಲಿ ಅದಕ್ಕಿಂತಲೂ ಗಂಭೀರ ಅಪರಾಧಗಳಾಗಿವೆ. ಕ್ಷೋಭೆಯು ಕೊಲೆಗಿಂತಲೂ ಘೋರವಾಗಿದೆ. ಅವರಿಗೆ ಸಾಧ್ಯವಾಗುವು-ದಾದರೆ ಅವರು ನಿಮ್ಮನ್ನು ನಿಮ್ಮ ಧರ್ಮದಿಂದ ಹಿಂದಿರುಗುವಂತೆ ಮಾಡುವವರೆಗೂ ನಿಮ್ಮೊಂದಿಗೆ ಯುದ್ಧ ಮಾಡುತ್ತಲೇ ಇರುವರು. ನಿಮ್ಮಲ್ಲಿ ಯಾರಾದರೂ ತನ್ನ ಧರ್ಮವನ್ನು ತ್ಯಜಿಸಿ, ನಂತರ ಸತ್ಯನಿಷೇಧಿಯಾಗಿ ಸಾಯುವುದಾದರೆ, ಅವರ ಕರ್ಮಗಳು ಇಹಲೋಕದಲ್ಲೂ ಪರಲೋಕದಲ್ಲೂ ನಿಷ್ಫಲವಾಗುತ್ತವೆ. ಅವರೇ ನರಕವಾಸಿಗಳು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು.

يَسْـَٔلُونَكَ عَنِ ٱلشَّهْرِ ٱلْحَرَامِ قِتَالٍ فِيهِ ۖ قُلْ
قِتَالٌ فِيهِ كَبِيرٌ ۖ وَصَدٌّ عَن سَبِيلِ ٱللَّهِ وَكُفْرٌۢ
بِهِۦ وَٱلْمَسْجِدِ ٱلْحَرَامِ وَإِخْرَاجُ أَهْلِهِۦ مِنْهُ
أَكْبَرُ عِندَ ٱللَّهِ ۚ وَٱلْفِتْنَةُ أَكْبَرُ مِنَ ٱلْقَتْلِ ۗ
وَلَا يَزَالُونَ يُقَٰتِلُونَكُمْ حَتَّىٰ يَرُدُّوكُمْ عَن
دِينِكُمْ إِنِ ٱسْتَطَٰعُوا۟ ۚ وَمَن يَرْتَدِدْ مِنكُمْ
عَن دِينِهِۦ فَيَمُتْ وَهُوَ كَافِرٌ فَأُو۟لَٰٓئِكَ حَبِطَتْ
أَعْمَٰلُهُمْ فِى ٱلدُّنْيَا وَٱلْءَاخِرَةِ ۖ وَأُو۟لَٰٓئِكَ أَصْحَٰبُ
ٱلنَّارِ ۖ هُمْ فِيهَا خَٰلِدُونَ ﴿٢١٧﴾

---

218. ನಿಶ್ಚಯವಾಗಿಯೂ ಸತ್ಯವಿಶ್ವಾಸಿಗಳು, ಹಿಜ್ರ (ವಲಸೆ) ಹೋದವರು ಮತ್ತು ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡಿದವರು ಯಾರೋ—ಅವರು ಅಲ್ಲಾಹನ ದಯೆಯನ್ನು ನಿರೀಕ್ಷಿಸುತ್ತಾರೆ. ಅಲ್ಲಾಹು ಕ್ಷಮಿಸುವವನು ಮತ್ತು ಕರುಣೆ ತೋರುವವನಾಗಿದ್ದಾನೆ.

إِنَّ ٱلَّذِينَ ءَامَنُوا۟ وَٱلَّذِينَ هَاجَرُوا۟ وَجَٰهَدُوا۟ فِى
سَبِيلِ ٱللَّهِ أُو۟لَٰٓئِكَ يَرْجُونَ رَحْمَتَ ٱللَّهِ ۚ وَٱللَّهُ
غَفُورٌ رَّحِيمٌ ﴿٢١٨﴾

---

219. ಅವರು ನಿಮ್ಮೊಂದಿಗೆ ಮದ್ಯ ಮತ್ತು ಜೂಜಿನ ಬಗ್ಗೆ

يَسْـَٔلُونَكَ عَنِ ٱلْخَمْرِ وَٱلْمَيْسِرِ ۖ قُلْ فِيهِمَآ إِثْمٌ

كَبِيرٞ وَمَنَٰفِعُ لِلنَّاسِ وَإِثۡمُهُمَآ أَكۡبَرُ مِن
نَّفۡعِهِمَاۗ وَيَسۡـَٔلُونَكَ مَاذَا يُنفِقُونَۖ قُلِ ٱلۡعَفۡوَۗ
كَذَٰلِكَ يُبَيِّنُ ٱللَّهُ لَكُمُ ٱلۡأٓيَٰتِ لَعَلَّكُمۡ
تَتَفَكَّرُونَ ٢١٩

ವಿಚಾರಿಸುತ್ತಾರೆ. ಹೇಳಿರಿ: “ಅವೆರಡರಲ್ಲೂ ಬಹುದೊಡ್ಡ ಪಾಪವಿದೆ ಮತ್ತು ಜನರಿಗೆ ಕೆಲವು ಪ್ರಯೋಜನಗಳೂ ಇವೆ.[1] ಆದರೆ ಅವುಗಳ ಪಾಪವು ಪ್ರಯೋಜನಕ್ಕಿಂತಲೂ ದೊಡ್ಡದು.” ಅವರು ಏನು ಖರ್ಚು ಮಾಡಬೇಕೆಂದು ಅವರು ನಿಮ್ಮೊಡನೆ ಕೇಳುತ್ತಾರೆ. ಹೇಳಿರಿ: “ಅಗತ್ಯಕ್ಕಿಂತ ಮಿಕ್ಕಿದ್ದು.” ಈ ರೀತಿ ಅಲ್ಲಾಹು ತನ್ನ ನಿಯಮಗಳನ್ನು ನಿಮಗೆ ಸ್ಪಷ್ಟವಾಗಿ ವಿವರಿಸಿಕೊಡುತ್ತಾನೆ. ನೀವು ಆಲೋಚಿಸುವುದಕ್ಕಾಗಿ.

---

فِي ٱلدُّنۡيَا وَٱلۡأٓخِرَةِۗ وَيَسۡـَٔلُونَكَ عَنِ ٱلۡيَتَٰمَىٰۖ
قُلۡ إِصۡلَاحٞ لَّهُمۡ خَيۡرٞۖ وَإِن تُخَالِطُوهُمۡ
فَإِخۡوَٰنُكُمۡۚ وَٱللَّهُ يَعۡلَمُ ٱلۡمُفۡسِدَ مِنَ ٱلۡمُصۡلِحِۚ
وَلَوۡ شَآءَ ٱللَّهُ لَأَعۡنَتَكُمۡۚ إِنَّ ٱللَّهَ عَزِيزٌ
حَكِيمٞ ٢٢٠

220. ಇಹಲೋಕ ಮತ್ತು ಪರಲೋಕದ ಕುರಿತು. ಅವರು ನಿಮ್ಮೊಂದಿಗೆ ಅನಾಥರ ಕುರಿತು ವಿಚಾರಿಸುತ್ತಾರೆ. ಹೇಳಿರಿ: “ಅವರ ಯೋಗಕ್ಷೇಮ ನೋಡಿಕೊಳ್ಳುವುದು ಒಳ್ಳೆಯದೇ ಆಗಿದೆ. ನೀವು ಅವರ ಆಸ್ತಿಯನ್ನು ನಿಮ್ಮ ಆಸ್ತಿಯೊಂದಿಗೆ ಸೇರಿಸಿದರೂ (ತಪ್ಪಿಲ್ಲ); ಅವರು ನಿಮ್ಮ ಸಹೋದರರಾಗಿದ್ದಾರೆ. ಯಾರಿಗೆ ಕೆಟ್ಟ ಉದ್ದೇಶವಿದೆ ಮತ್ತು ಯಾರಿಗೆ ಒಳ್ಳೆಯ ಉದ್ದೇಶವಿದೆಯೆಂದು ಅಲ್ಲಾಹು ತಿಳಿದಿದ್ದಾನೆ. ಅಲ್ಲಾಹು ಇಚ್ಛಿಸಿದರೆ ನಿಮಗೆ ಕಷ್ಟ ಕೊಡುತ್ತಿದ್ದನು. ನಿಶ್ಚಯವಾಗಿಯೂ ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.”

---

وَلَا تَنكِحُواْ ٱلۡمُشۡرِكَٰتِ حَتَّىٰ يُؤۡمِنَّۚ وَلَأَمَةٞ
مُّؤۡمِنَةٌ خَيۡرٞ مِّن مُّشۡرِكَةٖ وَلَوۡ أَعۡجَبَتۡكُمۡۗ وَلَا
تُنكِحُواْ ٱلۡمُشۡرِكِينَ حَتَّىٰ يُؤۡمِنُواْۚ وَلَعَبۡدٞ مُّؤۡمِنٌ
خَيۡرٞ مِّن مُّشۡرِكٖ وَلَوۡ أَعۡجَبَكُمۡۗ أُوْلَٰٓئِكَ
يَدۡعُونَ إِلَى ٱلنَّارِۖ وَٱللَّهُ يَدۡعُوٓاْ إِلَى ٱلۡجَنَّةِ
وَٱلۡمَغۡفِرَةِ بِإِذۡنِهِۦۖ وَيُبَيِّنُ ءَايَٰتِهِۦ لِلنَّاسِ لَعَلَّهُمۡ
يَتَذَكَّرُونَ ٢٢١

221. ಬಹುದೇವವಿಶ್ವಾಸಿ ಮಹಿಳೆಯರನ್ನು ಅವರು ಸತ್ಯವಿಶ್ವಾಸಿಗಳಾಗುವ ತನಕ ವಿವಾಹವಾಗಬೇಡಿ. ಸತ್ಯವಿಶ್ವಾಸಿಯಾದ ಗುಲಾಮಸ್ತ್ರೀ ಸ್ವತಂತ್ರಳಾದ ಬಹುದೇವವಿಶ್ವಾಸಿ ಮಹಿಳೆಗಿಂತ ಶ್ರೇಷ್ಠಳು. ಅವಳು (ಬಹುದೇವವಿಶ್ವಾಸಿ) ನಿಮಗೆ ಆಕರ್ಷಕವಾಗಿ ಕಂಡರೂ ಸಹ. ಬಹುದೇವವಿಶ್ವಾಸಿ ಪುರುಷರಿಗೆ ಅವರು ಸತ್ಯವಿಶ್ವಾಸಿಗಳಾಗುವ ತನಕ ನಿಮ್ಮ ಮಹಿಳೆಯರನ್ನು ವಿವಾಹ ಮಾಡಿಕೊಡಬೇಡಿ. ಸತ್ಯವಿಶ್ವಾಸಿಯಾದ ಗುಲಾಮ ಸ್ವತಂತ್ರನಾದ ಬಹುದೇವವಿಶ್ವಾಸಿಗಿಂತ ಶ್ರೇಷ್ಠನು. ಅವನು (ಬಹುದೇವವಿಶ್ವಾಸಿ) ನಿಮಗೆ ಆಕರ್ಷಕವಾಗಿ ಕಂಡರೂ ಸಹ. ಅವರು ನಿಮ್ಮನ್ನು ನರಕಕ್ಕೆ ಕರೆಯುತ್ತಿದ್ದಾರೆ. ಅಲ್ಲಾಹು ತನ್ನ ಅಪ್ಪಣೆಯಿಂದ ನಿಮ್ಮನ್ನು ಸ್ವರ್ಗಕ್ಕೆ ಮತ್ತು ಕ್ಷಮೆಗೆ ಕರೆಯುತ್ತಿದ್ದಾನೆ. ಅವನು ಜನರಿಗೆ ತನ್ನ ನಿಯಮಗಳನ್ನು ವಿವರಿಸಿಕೊಡುತ್ತಾನೆ. ಅವರು ಉಪದೇಶ ಪಡೆಯುವುದಕ್ಕಾಗಿ.

---

[1] ಮದ್ಯ ಮತ್ತು ಜೂಜಿನಲ್ಲಿ ಕೆಲವು ಲೌಕಿಕ ಪ್ರಯೋಜನಗಳಿವೆ. ಉದಾಹರಣೆಗೆ, ಮದ್ಯವು ತಾತ್ಕಾಲಿಕವಾಗಿ ದೇಹದಲ್ಲಿ ಉತ್ಸಾಹ ಮತ್ತು ಚುರುಕುತನವನ್ನು ಹೆಚ್ಚಿಸುತ್ತದೆ. ಕೆಲವೊಮ್ಮೆ ಮನಸ್ಸು ಮದ್ಯ ಸೇವನೆಯಿಂದ ಹರಿತವಾಗುತ್ತದೆ. ಇದರಿಂದ ಲೈಂಗಿಕ ಸಾಮರ್ಥ್ಯವು ಹೆಚ್ಚಾಗುತ್ತದೆ. ಅದೇ ರೀತಿ, ಮದ್ಯ ಮಾರಾಟವು ಲಾಭದಾಯಕ ಉದ್ಯಮವಾಗಿದೆ. ಜೂಜಿನಲ್ಲಿ ಕೆಲವೊಮ್ಮೆ ಅದೃಷ್ಟವಿರುವವನು ಕೋಟಿಗಳನ್ನು ಸಂಪಾದಿಸುತ್ತಾನೆ. ಆದರೆ ಈ ಪ್ರಯೋಜನಗಳು ವ್ಯಕ್ತಿಯ ಬುದ್ಧಿ ಮತ್ತು ಧರ್ಮಕ್ಕೆ ಉಂಟು ಮಾಡುವ ನಷ್ಟ ಮತ್ತು ಹಾನಿಗಳಿಗೆ ಹೋಲಿಸಿದರೆ ಅವುಗಳ ಪ್ರಯೋಜನವು ಉಲ್ಲೇಖಾರ್ಹವೇ ಅಲ್ಲ.

222. ಅವರು ನಿಮ್ಮೊಂದಿಗೆ ಋತುಸ್ರಾವದ ಕುರಿತು ವಿಚಾರಿಸುತ್ತಾರೆ. ಹೇಳಿರಿ: "ಅದು ಹೊಲಸು. ಆದ್ದರಿಂದ ಋತುಸ್ರಾವದ ಅವಧಿಯಲ್ಲಿ ಮಹಿಳೆಯರಿಂದ ದೂರವಿರಿ. ಅವರು ಶುದ್ಧವಾಗುವ ತನಕ ಅವರ ಬಳಿಗೆ ಹೋಗಬೇಡಿ. ಅವರು ಶುದ್ಧವಾದರೆ ಅಲ್ಲಾಹು ನಿಮಗೆ ಆಜ್ಞಾಪಿಸಿದ ಕಡೆಯಿಂದ ಅವರ ಬಳಿಗೆ ಹೋಗಿರಿ. ನಿಶ್ಚಯವಾಗಿಯೂ ಅಲ್ಲಾಹು ಪಶ್ಚಾತ್ತಾಪ-ಪಡುವವರನ್ನು ಪ್ರೀತಿಸುತ್ತಾನೆ ಮತ್ತು ಶುದ್ಧವಾಗಿರುವವರನ್ನು ಕೂಡ ಪ್ರೀತಿಸುತ್ತಾನೆ."

وَيَسۡـَٔلُونَكَ عَنِ ٱلۡمَحِيضِۖ قُلۡ هُوَ أَذٗى فَٱعۡتَزِلُواْ ٱلنِّسَآءَ فِي ٱلۡمَحِيضِ وَلَا تَقۡرَبُوهُنَّ حَتَّىٰ يَطۡهُرۡنَۖ فَإِذَا تَطَهَّرۡنَ فَأۡتُوهُنَّ مِنۡ حَيۡثُ أَمَرَكُمُ ٱللَّهُۚ إِنَّ ٱللَّهَ يُحِبُّ ٱلتَّوَّٰبِينَ وَيُحِبُّ ٱلۡمُتَطَهِّرِينَ ٢٢٢

223. ನಿಮ್ಮ ಪತ್ನಿಯರು ನಿಮ್ಮ ಹೊಲದಂತೆ. ನೀವು ಇಚ್ಛಿಸುವಂತೆ ನಿಮ್ಮ ಹೊಲಕ್ಕೆ ಹೋಗಿರಿ ಮತ್ತು ನಿಮಗಾಗಿ (ಸತ್ಕರ್ಮಗಳನ್ನು) ಮುಂದಕ್ಕೆ ಕಳುಹಿಸಿರಿ. ಅಲ್ಲಾಹನನ್ನು ಭಯಪಡಿರಿ. ತಿಳಿಯಿರಿ! ನಿಶ್ಚಯವಾಗಿಯೂ ನೀವು ಅವನನ್ನು ಭೇಟಿಯಾಗಲಿರುವಿರಿ. ಸತ್ಯವಿಶ್ವಾಸಿಗಳಿಗೆ ಸುವಾರ್ತೆಯನ್ನು ತಿಳಿಸಿರಿ.

نِسَآؤُكُمۡ حَرۡثٞ لَّكُمۡ فَأۡتُواْ حَرۡثَكُمۡ أَنَّىٰ شِئۡتُمۡۖ وَقَدِّمُواْ لِأَنفُسِكُمۡۚ وَٱتَّقُواْ ٱللَّهَ وَٱعۡلَمُوٓاْ أَنَّكُم مُّلَٰقُوهُۗ وَبَشِّرِ ٱلۡمُؤۡمِنِينَ ٢٢٣

224. ಒಳಿತು ಮಾಡುವುದನ್ನು, ದೇವಭಯದಿಂದ ಜೀವಿಸುವುದನ್ನು ಮತ್ತು ಜನರ ನಡುವೆ ಸುಧಾರಣೆ ಮಾಡುವುದನ್ನು ಬಿಟ್ಟುಬಿ-ಡುವುದಕ್ಕಾಗಿ ನಿಮ್ಮ ಪ್ರತಿಜ್ಞೆಗಳಿಗೆ ಅಲ್ಲಾಹನನ್ನು ಗುರಿಯನ್ನಾಗಿ ಮಾಡಬೇಡಿ.[1] ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

وَلَا تَجۡعَلُواْ ٱللَّهَ عُرۡضَةٗ لِّأَيۡمَٰنِكُمۡ أَن تَبَرُّواْ وَتَتَّقُواْ وَتُصۡلِحُواْ بَيۡنَ ٱلنَّاسِۚ وَٱللَّهُ سَمِيعٌ عَلِيمٞ ٢٢٤

225. ನೀವು ದೃಢನಿರ್ಧಾರದಿಂದ ಮಾಡದ ಪ್ರತಿಜ್ಞೆಗಳಿಗಾಗಿ ಅಲ್ಲಾಹು ನಿಮ್ಮನ್ನು ಶಿಕ್ಷಿಸುವುದಿಲ್ಲ.[2] ಆದರೆ ನೀವು ನಿಮ್ಮ ಹೃದಯದಲ್ಲಿ ಮಾಡಿದ ಪ್ರತಿಜ್ಞೆಗಳಿಗೆ ಅವನು ನಿಮ್ಮನ್ನು ಶಿಕ್ಷಿಸುತ್ತಾನೆ. ಅಲ್ಲಾಹು ಕ್ಷಮಿಸುವವನು ಮತ್ತು ಸಹಿಷ್ಣುತೆಯುಳ್ಳನಾಗಿದ್ದಾನೆ.

لَّا يُؤَاخِذُكُمُ ٱللَّهُ بِٱللَّغۡوِ فِيٓ أَيۡمَٰنِكُمۡ وَلَٰكِن يُؤَاخِذُكُم بِمَا كَسَبَتۡ قُلُوبُكُمۡۗ وَٱللَّهُ غَفُورٌ حَلِيمٞ ٢٢٥

226. ತಮ್ಮ ಪತ್ನಿಯರೊಡನೆ (ಲೈಂಗಿಕ ಸಂಪರ್ಕ ಮಾಡುವುದಿಲ್ಲವೆಂದು) ಪ್ರತಿಜ್ಞೆ ಮಾಡುವವರಿಗೆ ನಾಲ್ಕು ತಿಂಗಳ ಕಾಲಾವಕಾಶವಿದೆ. ಅವರೇನಾದರೂ (ದಾಂಪತ್ಯಕ್ಕೆ) ಮರಳಿದರೆ, ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ಕರುಣೆ ತೋರುವವನಾಗಿದ್ದಾನೆ.[3]

لِّلَّذِينَ يُؤۡلُونَ مِن نِّسَآئِهِمۡ تَرَبُّصُ أَرۡبَعَةِ أَشۡهُرٖۖ فَإِن فَآءُو فَإِنَّ ٱللَّهَ غَفُورٞ رَّحِيمٞ ٢٢٦

---

[1] ಅಂದರೆ, ನಾನು ಇನ್ನು ಮುಂದೆ ಯಾವುದೇ ಒಳಿತು ಮಾಡುವುದಿಲ್ಲ, ನಾನು ಇನ್ನು ಮುಂದೆ ಇವನೊಡನೆ ಮಾತನಾಡುವುದೇ ಇಲ್ಲ, ನಾನು ಇನ್ನು ಮುಂದೆ ಇವರಿಬ್ಬರ ನಡುವೆ ರಾಜಿ ಮಾಡುವುದೇ ಇಲ್ಲ ಎಂಬಿತ್ಯಾದಿಯಾಗಿ ಕೋಪದಿಂದ ಪ್ರತಿಜ್ಞೆ ಮಾಡಬೇಡಿ. ಈ ರೀತಿ ಪ್ರತಿಜ್ಞೆ ಮಾಡಿದವರು ಪರಿಹಾರ ನೀಡಿ ಆ ಪ್ರತಿಜ್ಞೆಯನ್ನು ಹಿಂಪಡೆಯಬೇಕು.

[2] ಅಂದರೆ ನೀವು ಅಭ್ಯಾಸ ಬಲದಿಂದ ಅಥವಾ ಉದ್ದೇಶಪೂರ್ವಕವಲ್ಲದೆ ಮಾಡುವ ಪ್ರತಿಜ್ಞೆಗಳನ್ನು ಉಲ್ಲಂಘಿಸಿದರೆ ಅಲ್ಲಾಹು ನಿಮ್ಮನ್ನು ಶಿಕ್ಷಿಸುವುದಿಲ್ಲ.

[3] ನಾನು ಹೆಂಡತಿಯೊಂದಿಗೆ ಒಂದು ತಿಂಗಳ ಕಾಲ ಅಥವಾ ಎರಡು ತಿಂಗಳ ಕಾಲ ಸಂಬಂಧವಿಟ್ಟುಕೊಳ್ಳುವುದಿಲ್ಲವೆಂದು ಗಂಡ ಪ್ರತಿಜ್ಞೆ

227. ಆದರೆ, ಅವರು ವಿಚ್ಛೇದನ ಮಾಡಲು ನಿರ್ಧರಿಸಿದರೆ, ನಿಶ್ಚಯವಾಗಿಯೂ ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

وَإِنۡ عَزَمُواْ ٱلطَّلَٰقَ فَإِنَّ ٱللَّهَ سَمِيعٌ عَلِيمٞ ٢٢٧

228. ವಿಚ್ಛೇದಿತ ಮಹಿಳೆಯರು ಸ್ವಯಂ ಮೂರು ಋತುಸ್ರಾವಗಳ ತನಕ ಕಾಯಬೇಕು. ಅವರಿಗೆ ಅಲ್ಲಾಹನಲ್ಲಿ ಮತ್ತು ಅಂತ್ಯದಿನದಲ್ಲಿ ವಿಶ್ವಾಸವಿದ್ದರೆ ಅವರ ಗರ್ಭಗಳಲ್ಲಿ ಅಲ್ಲಾಹು ಸೃಷ್ಟಿಸಿರುವುದನ್ನು ಮುಚ್ಚಿಡುವುದು ಅವರಿಗೆ ಧರ್ಮಸಮ್ಮತವಲ್ಲ. ಅವರ ಗಂಡಂದಿರು ಅವರನ್ನು ಆ ಅವಧಿಯೊಳಗೆ ಮರಳಿ ಸ್ವೀಕರಿಸಲು ಪೂರ್ಣ ಹಕ್ಕುಳ್ಳವರಾಗಿದ್ದಾರೆ—ಅವರ (ಗಂಡಂದಿರ) ಉದ್ದೇಶವು ರಾಜಿ ಮಾಡುವುದಾಗಿದ್ದರೆ.[1] ಪುರುಷರಿಗೆ ಮಹಿಳೆಯರ ಮೇಲೆ ಹಕ್ಕುಗಳಿರುವಂತೆ ಮಹಿಳೆಯರಿಗೂ ಪುರುಷರ ಮೇಲೆ ಸ್ವೀಕಾರಾರ್ಹ ರೀತಿಯಲ್ಲಿರುವ ಹಕ್ಕುಗಳಿವೆ. ಆದರೆ ಪುರುಷರಿಗೆ ಮಹಿಳೆಯರಿಗಿಂತ ಹೆಚ್ಚಿನ ಒಂದು ಪದವಿಯಿದೆ. ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَٱلۡمُطَلَّقَٰتُ يَتَرَبَّصۡنَ بِأَنفُسِهِنَّ ثَلَٰثَةَ قُرُوٓءٖۚ وَلَا يَحِلُّ لَهُنَّ أَن يَكۡتُمۡنَ مَا خَلَقَ ٱللَّهُ فِيٓ أَرۡحَامِهِنَّ إِن كُنَّ يُؤۡمِنَّ بِٱللَّهِ وَٱلۡيَوۡمِ ٱلۡأٓخِرِۚ وَبُعُولَتُهُنَّ أَحَقُّ بِرَدِّهِنَّ فِي ذَٰلِكَ إِنۡ أَرَادُوٓاْ إِصۡلَٰحٗاۚ وَلَهُنَّ مِثۡلُ ٱلَّذِي عَلَيۡهِنَّ بِٱلۡمَعۡرُوفِۚ وَلِلرِّجَالِ عَلَيۡهِنَّ دَرَجَةٞۗ وَٱللَّهُ عَزِيزٌ حَكِيمٌ ٢٢٨

229. ವಿಚ್ಛೇದನವು ಎರಡು ಬಾರಿ.[2] ನಂತರ ಒಂದೋ ಸ್ವೀಕಾರಾರ್ಹ ರೀತಿಯಲ್ಲಿ ಬಳಿಯಿರಿಸಿಕೊಳ್ಳಬೇಕು ಅಥವಾ ಉತ್ತಮ ರೀತಿಯಲ್ಲಿ ಬಿಟ್ಟು ಬಿಡಬೇಕು. ನೀವು ಅವರಿಗೆ ನೀಡಿದ ಯಾವುದೇ ವಸ್ತುವನ್ನು ಮರಳಿ ಪಡೆಯುವುದು ನಿಮಗೆ ಧರ್ಮಸಮ್ಮತವಲ್ಲ. ಅಲ್ಲಾಹನ ಎಲ್ಲೆಗಳೊಳಗೆ ನಿಲ್ಲಲು ಅವರಿಬ್ಬರಿಗೆ

ٱلطَّلَٰقُ مَرَّتَانِۖ فَإِمۡسَاكُۢ بِمَعۡرُوفٍ أَوۡ تَسۡرِيحُۢ بِإِحۡسَٰنٖۗ وَلَا يَحِلُّ لَكُمۡ أَن تَأۡخُذُواْ مِمَّآ ءَاتَيۡتُمُوهُنَّ شَيۡـًٔا إِلَّآ أَن يَخَافَآ أَلَّا يُقِيمَا حُدُودَ ٱللَّهِۖ فَإِنۡ خِفۡتُمۡ أَلَّا يُقِيمَا حُدُودَ ٱللَّهِ فَلَا

ಮಾಡಿ, ಆ ನಿಗದಿತ ಅವಧಿಯ ನಂತರ ಹೆಂಡತಿಯೊಂದಿಗೆ ಸಂಬಂಧ ಮುಂದುವರಿಸಿದರೆ ಆತ ಪರಿಹಾರ ನೀಡಬೇಕಾಗಿಲ್ಲ. ಆದರೆ ಆ ಅವಧಿ ಪೂರ್ಣಗೊಳ್ಳುವುದಕ್ಕೆ ಮುಂಚೆ ಅವನು ಹೆಂಡತಿಯೊಂದಿಗೆ ಸಂಬಂಧ ಸ್ಥಾಪಿಸಿದರೆ ಪರಿಹಾರ ನೀಡಬೇಕಾಗುತ್ತದೆ. ಇನ್ನು ಗಂಡ ಅವಧಿಯನ್ನು ನಿಶ್ಚಯಿಸದೆ ನಾನು ನನ್ನ ಹೆಂಡತಿಯೊಂದಿಗೆ ಸಂಬಂಧವಿಟ್ಟುಕೊಳ್ಳುವುದಿಲ್ಲ ಎಂದು ಪ್ರತಿಜ್ಞೆ ಮಾಡಿದರೆ, ಅವನಿಗೆ ನಾಲ್ಕು ತಿಂಗಳ ಕಾಲಾವಕಾಶವಿದೆ. ಅದರೊಳಗೆ ಒಂದೋ ಅವನು ಹೆಂಡತಿಯೊಂದಿಗೆ ಸಂಬಂಧವನ್ನು ಮುಂದುವರಿಸಬೇಕು ಅಥವಾ ಆಕೆಗೆ ವಿಚ್ಛೇದನೆ ನೀಡಬೇಕು. ನಾಲ್ಕು ತಿಂಗಳುಗಳಿಗಿಂತ ಹೆಚ್ಚು ಕಾಲ ಹೆಂಡತಿಯೊಂದಿಗೆ ಸಂಬಂಧ ಕಡಿಯುವುದಕ್ಕೆ ಅನುಮತಿಯಿಲ್ಲ. ಆತ ಸಂಬಂಧವನ್ನು ಮುಂದುವರಿಸುವುದಾದರೆ ಅದಕ್ಕೆ ಪರಿಹಾರ ನೀಡಬೇಕು. ಇನ್ನು ಅವನು ಸಂಬಂಧವನ್ನು ಮುಂದುವರಿಸದೆ ಮತ್ತು ವಿಚ್ಛೇದನೆಯನ್ನೂ ನೀಡದೆ, ಸಮಸ್ಯೆಯು ನ್ಯಾಯಾಲಯವನ್ನು ತಲುಪಿದರೆ, ಹೆಂಡತಿಗೆ ಅನ್ಯಾಯವಾಗದಂತೆ ನೋಡಿಕೊಳ್ಳಲು ಅವನಿಗೆ ಎರಡರಲ್ಲಿ ಒಂದನ್ನು ಆರಿಸುವಂತೆ ಒತ್ತಡ ಹೇರಲಾಗುತ್ತದೆ.

[1] ಪತ್ನಿಯನ್ನು ಮರಳಿ ಸ್ವೀಕರಿಸುವುದು ಒಳಿತಿನ ಉದ್ದೇಶದಿಂದಾಗಿದ್ದರೆ, ದೀಕ್ಷಾಕಾಲ (ಇದ್ದ) ಮುಗಿಯುವುದಕ್ಕೆ ಮೊದಲು ಪತ್ನಿಯನ್ನು ಮರಳಿ ಸ್ವೀಕರಿಸುವ ಪೂರ್ಣ ಹಕ್ಕು ಗಂಡನಿಗಿದೆ. ಅದನ್ನು ತಡೆಯುವ ಹಕ್ಕು ಹೆಂಡತಿಯ ಕಡೆಯವರಿಗಿಲ್ಲ.

[2] ಗಂಡನಿಗೆ ಹೆಂಡತಿಯನ್ನು ಮರಳಿ ಸ್ವೀಕರಿಸಬಹುದಾದ ವಿಚ್ಛೇದನೆಯು ಎರಡು ಬಾರಿ ಮಾತ್ರ. ಮೊದಲ ಬಾರಿ ವಿಚ್ಛೇದಿಸಿದರೆ ಮರಳಿ ಸ್ವೀಕರಿಸಬಹುದು ಮತ್ತು ಎರಡನೇ ಬಾರಿ ವಿಚ್ಛೇದಿಸಿದರೂ ಮರಳಿ ಸ್ವೀಕರಿಸಬಹುದು. ಆದರೆ ಮೂರನೇ ಬಾರಿ ವಿಚ್ಛೇದಿಸಿದರೆ (ಮೂರನೇ ತಲಾಕ್ ಹೇಳಿದರೆ) ನಂತರ ಹೆಂಡತಿಯನ್ನು ಮರಳಿ ಸ್ವೀಕರಿಸುವ ಅನುಮತಿಯಿಲ್ಲ. ಇಸ್ಲಾಮೀ ಪೂರ್ವ ಕಾಲದಲ್ಲಿ ವಿಚ್ಛೇದನೆಗೆ ಮತ್ತು ಮರಳಿ ಸ್ವೀಕರಿಸುವುದಕ್ಕೆ ಯಾವುದೇ ಮಿತಿಯಿರಲಿಲ್ಲ. ಎಷ್ಟು ಬಾರಿ ಬೇಕಾದರೂ ವಿಚ್ಛೇದನೆ ನೀಡಬಹುದಿತ್ತು ಮತ್ತು ಎಷ್ಟು ಬಾರಿ ಬೇಕಾದರೂ ಮರಳಿ ಪಡೆಯಬಹುದಿತ್ತು. ಇದರಿಂದ ಮಹಿಳೆಯರಿಗೆ ತುಂಬಾ ಅನ್ಯಾಯವಾಗುತ್ತಿತ್ತು. ಏಕೆಂದರೆ, ಅತ್ತ ಗಂಡ ಪೂರ್ಣವಾಗಿ ವಿಚ್ಛೇದಿಸುತ್ತಲೂ ಇರಲಿಲ್ಲ ಮತ್ತು ಪತ್ನಿಯಾಗಿಟ್ಟುಕೊಳ್ಳುತ್ತಲೂ ಇರಲಿಲ್ಲ. ಗಂಡನಿಂದ ವಿಚ್ಛೇದನೆ ಸಿಗದೆ ಅವಳಿಗೆ ಬೇರೆ ಮದುವೆಯಾಗಲು ಸಾಧ್ಯವಾಗುತ್ತಿರಲಿಲ್ಲ. ಆಕೆ ಗಂಡನೊಂದಿಗೆ ನರಕಸದ್ರಶ ಜೀವನವನ್ನು ಅನುಭವಿಸಬೇಕಾಗಿ ಬರುತ್ತಿತ್ತು.

جُنَاحَ عَلَيْهِمَا فِيمَا ٱفْتَدَتْ بِهِۦ ۗ تِلْكَ حُدُودُ
ٱللَّهِ فَلَا تَعْتَدُوهَا ۚ وَمَن يَتَعَدَّ حُدُودَ ٱللَّهِ
فَأُو۟لَٰٓئِكَ هُمُ ٱلظَّٰلِمُونَ ٢٢٩

ಸಾಧ್ಯವಾಗಲಾರದು ಎಂದು ಅವರಿಬ್ಬರು ಭಯಪಡುವ ಹೊರತು. ಅಲ್ಲಾಹನ ಎಲ್ಲೆಗಳೊಳಗೆ ನಿಲ್ಲಲು ಅವರಿಬ್ಬರಿಗೆ ಸಾಧ್ಯವಾಗಲಾರದೆಂದು ನೀವು ಭಯಪಡುವುದಾದರೆ, ಪತ್ನಿ ಏನಾದರೂ ಕೊಟ್ಟು ವಿಚ್ಛೇದನ ಪಡೆಯುವುದರಲ್ಲಿ ಅವರಿಬ್ಬರಿಗೂ ದೋಷವಿಲ್ಲ.[1] ಇವು ಅಲ್ಲಾಹನ ಎಲ್ಲೆಗಳಾಗಿವೆ. ನೀವು ಅವುಗಳನ್ನು ಮೀರಿ ಹೋಗಬೇಡಿ. ಯಾರು ಅಲ್ಲಾಹನ ಎಲ್ಲೆಗಳನ್ನು ಮೀರಿ ಹೋಗುತ್ತಾರೋ ಅವರೇ ಅಕ್ರಮಿಗಳು.

---

فَإِن طَلَّقَهَا فَلَا تَحِلُّ لَهُۥ مِنۢ بَعْدُ حَتَّىٰ تَنكِحَ
زَوْجًا غَيْرَهُۥ ۗ فَإِن طَلَّقَهَا فَلَا جُنَاحَ عَلَيْهِمَآ
أَن يَتَرَاجَعَآ إِن ظَنَّآ أَن يُقِيمَا حُدُودَ ٱللَّهِ ۗ
وَتِلْكَ حُدُودُ ٱللَّهِ يُبَيِّنُهَا لِقَوْمٍ يَعْلَمُونَ ٢٣٠

230. ಇನ್ನು (ಮೂರನೇ ಬಾರಿ) ಅವನು ಅವಳನ್ನು ವಿಚ್ಛೇದಿಸಿದರೆ, ನಂತರ ಅವಳು ಬೇರೊಬ್ಬನನ್ನು ವಿವಾಹವಾಗುವ ತನಕ ಇವನಿಗೆ ಧರ್ಮಸಮ್ಮತಳಾಗುವುದಿಲ್ಲ. ಆದರೆ ಅವನು ಕೂಡ ಅವಳಿಗೆ ವಿಚ್ಛೇದನ ನೀಡಿದರೆ, ಅಲ್ಲಾಹನ ಎಲ್ಲೆಗಳೊಳಗೆ ನಿಲ್ಲಲು ಸಾಧ್ಯವಾಗುವುದೆಂದು ಇವರಿಬ್ಬರು ಭಾವಿಸುವುದಾದರೆ (ಹಳೆಯ ದಾಂಪತ್ಯಕ್ಕೆ) ಮರಳುವುದರಲ್ಲಿ ಇವರಿಬ್ಬರಿಗೆ ದೋಷವಿಲ್ಲ. ಇವು ಅಲ್ಲಾಹನ ಎಲ್ಲೆಗಳಾಗಿವೆ. ತಿಳುವಳಿಕೆಯಿರುವ ಜನರಿಗಾಗಿ ಅವನು ಅವುಗಳನ್ನು ವಿವರಿಸಿಕೊಡುತ್ತಾನೆ.

---

وَإِذَا طَلَّقْتُمُ ٱلنِّسَآءَ فَبَلَغْنَ أَجَلَهُنَّ
فَأَمْسِكُوهُنَّ بِمَعْرُوفٍ أَوْ سَرِّحُوهُنَّ بِمَعْرُوفٍ ۚ
وَلَا تُمْسِكُوهُنَّ ضِرَارًا لِّتَعْتَدُوا۟ ۚ وَمَن يَفْعَلْ
ذَٰلِكَ فَقَدْ ظَلَمَ نَفْسَهُۥ ۚ وَلَا تَتَّخِذُوٓا۟ ءَايَٰتِ
ٱللَّهِ هُزُوًا ۚ وَٱذْكُرُوا۟ نِعْمَتَ ٱللَّهِ عَلَيْكُمْ
وَمَآ أَنزَلَ عَلَيْكُم مِّنَ ٱلْكِتَٰبِ وَٱلْحِكْمَةِ
يَعِظُكُم بِهِۦ ۚ وَٱتَّقُوا۟ ٱللَّهَ وَٱعْلَمُوٓا۟ أَنَّ ٱللَّهَ
بِكُلِّ شَىْءٍ عَلِيمٌ ٢٣١

231. ನೀವು ನಿಮ್ಮ ಪತ್ನಿಯರಿಗೆ ವಿಚ್ಛೇದನ ನೀಡಿ, ನಂತರ ಅವರು ತಮ್ಮ ಅವಧಿಯನ್ನು ಪೂರ್ಣಗೊಳಿಸಿದರೆ, ಸ್ವೀಕಾರಾರ್ಹ ರೀತಿಯಲ್ಲಿ ಅವರನ್ನು ಬಳಿಯಿಟ್ಟುಕೊಳ್ಳಿ ಅಥವಾ ಸ್ವೀಕಾರಾರ್ಹ ರೀತಿಯಲ್ಲಿ ಅವರನ್ನು ಬಿಟ್ಟು ಬಿಡಿ. ಅವರಿಗೆ ತೊಂದರೆ ಕೊಡುವ ಉದ್ದೇಶದಿಂದ ಅತಿರೇಕವೆಸಗಲು ಅವರನ್ನು ಬಳಿಯಿಟ್ಟು-ಕೊಳ್ಳಬೇಡಿ. ಯಾರು ಹೀಗೆ ಮಾಡುತ್ತಾನೋ ಅವನು ಅವನ ಮೇಲೆಯೇ ಅಕ್ರಮವೆಸಗಿದ್ದಾನೆ. ಅಲ್ಲಾಹನ ನಿಯಮಗಳನ್ನು ತಮಾಷೆಯಾಗಿ ಸ್ವೀಕರಿಸಬೇಡಿ. ಅಲ್ಲಾಹು ನಿಮಗೆ ದಯಪಾಲಿಸಿದ ಅನುಗ್ರಹಗಳನ್ನು ಮತ್ತು ನಿಮಗೆ ಉಪದೇಶ ನೀಡುತ್ತಾ ಅವನು ಅವತೀರ್ಣಗೊಳಿಸಿದ ಗ್ರಂಥ ಮತ್ತು ವಿವೇಕವನ್ನು ಸ್ಮರಿಸಿರಿ. ಅಲ್ಲಾಹನನ್ನು ಭಯಪಡಿರಿ. ತಿಳಿಯಿರಿ! ಅಲ್ಲಾಹು ಎಲ್ಲಾ ವಿಷಯಗಳನ್ನೂ ತಿಳಿದವನಾಗಿದ್ದಾನೆ.

---

وَإِذَا طَلَّقْتُمُ ٱلنِّسَآءَ فَبَلَغْنَ أَجَلَهُنَّ فَلَا
تَعْضُلُوهُنَّ أَن يَنكِحْنَ أَزْوَٰجَهُنَّ إِذَا تَرَٰضَوْا۟
بَيْنَهُم بِٱلْمَعْرُوفِ ۗ ذَٰلِكَ يُوعَظُ بِهِۦ مَن كَانَ

232. ನೀವು ನಿಮ್ಮ ಪತ್ನಿಯರಿಗೆ ವಿಚ್ಛೇದನ ನೀಡಿ, ನಂತರ ಅವರು ತಮ್ಮ ಅವಧಿಯನ್ನು ಪೂರ್ಣಗೊಳಿಸಿದರೆ, ಅವರು ಅವರ ಗಂಡಂದಿರನ್ನು ವಿವಾಹವಾಗುವುದನ್ನು

---

[1] ಪತ್ನಿ ವಿಚ್ಛೇದನ ಪಡೆಯುವುದನ್ನು ಖುಲಾ ಎಂದು ಕರೆಯಲಾಗುತ್ತದೆ. ಅಂದರೆ ಆಕೆ ಗಂಡನಿಂದ ಬೇರ್ಪಡಲು ಬಯಸಿದರೆ ಗಂಡ ಆಕೆಗೆ ನೀಡಿದ ವಧುದಕ್ಷಿಣೆ (ಮಹರ್)ಯನ್ನು ಹಿಂದಿರುಗಿಸಬೇಕು. ಗಂಡ ಬೇರ್ಪಡಲು ಒಪ್ಪದಿದ್ದರೆ, ನ್ಯಾಯಾಲಯವು ವಿಚ್ಛೇದನ ನೀಡಲು ಗಂಡನಿಗೆ ಆದೇಶಿಸುತ್ತದೆ. ಗಂಡ ವಿಚ್ಛೇದನ ನೀಡದಿದ್ದರೆ ನ್ಯಾಯಾಲಯವು ಮದುವೆಯನ್ನು ಫಸ್ಖ್ (ರದ್ದು) ಮಾಡುತ್ತದೆ.

مِنكُمۡ يُؤۡمِنُ بِٱللَّهِ وَٱلۡيَوۡمِ ٱلۡأٓخِرِۗ ذَٰلِكُمۡ أَزۡكَىٰ لَكُمۡ وَأَطۡهَرُۚ وَٱللَّهُ يَعۡلَمُ وَأَنتُمۡ لَا تَعۡلَمُونَ ٢٣٢

ತಡೆಯಬೇಡಿ—ಸ್ವೀಕಾರಾರ್ಹ ರೀತಿಯಲ್ಲಿ ಅವರು ಪರಸ್ಪರ ಸಂತೃಪ್ತರಾಗಿದ್ದರೆ. ಇದು ನಿಮ್ಮ ಪೈಕಿ ಅಲ್ಲಾಹನಲ್ಲಿ ಮತ್ತು ಅಂತ್ಯದಿನದಲ್ಲಿ ವಿಶ್ವಾಸವಿಡುವವರಿಗೆ ನೀಡುವ ಉಪದೇಶವಾಗಿದೆ. ಅದು ನಿಮಗೆ ಅತಿಶ್ರೇಷ್ಠ ಮತ್ತು ಅತ್ಯಂತ ಪರಿಶುದ್ಧವಾಗಿದೆ. ಅಲ್ಲಾಹು ತಿಳಿದಿದ್ದಾನೆ; ಆದರೆ ನೀವು ತಿಳಿದಿಲ್ಲ.

---

وَٱلۡوَٰلِدَٰتُ يُرۡضِعۡنَ أَوۡلَٰدَهُنَّ حَوۡلَيۡنِ كَامِلَيۡنِۖ لِمَنۡ أَرَادَ أَن يُتِمَّ ٱلرَّضَاعَةَۚ وَعَلَى ٱلۡمَوۡلُودِ لَهُۥ رِزۡقُهُنَّ وَكِسۡوَتُهُنَّ بِٱلۡمَعۡرُوفِۚ لَا تُكَلَّفُ نَفۡسٌ إِلَّا وُسۡعَهَاۚ لَا تُضَآرَّ وَٰلِدَةُۢ بِوَلَدِهَا وَلَا مَوۡلُودٞ لَّهُۥ بِوَلَدِهِۦۚ وَعَلَى ٱلۡوَارِثِ مِثۡلُ ذَٰلِكَۗ فَإِنۡ أَرَادَا فِصَالًا عَن تَرَاضٖ مِّنۡهُمَا وَتَشَاوُرٖ فَلَا جُنَاحَ عَلَيۡهِمَاۗ وَإِنۡ أَرَدتُّمۡ أَن تَسۡتَرۡضِعُوٓاْ أَوۡلَٰدَكُمۡ فَلَا جُنَاحَ عَلَيۡكُمۡ إِذَا سَلَّمۡتُم مَّآ ءَاتَيۡتُم بِٱلۡمَعۡرُوفِۗ وَٱتَّقُواْ ٱللَّهَ وَٱعۡلَمُوٓاْ أَنَّ ٱللَّهَ بِمَا تَعۡمَلُونَ بَصِيرٞ ٢٣٣

233. ತಾಯಂದಿರು ತಮ್ಮ ಮಕ್ಕಳಿಗೆ ಎರಡು ವರ್ಷ ಪೂರ್ಣವಾಗಿ ಸ್ತನಪಾನ ಮಾಡಬೇಕು—ಇದು ಸ್ತನಪಾನದ ಅವಧಿಯನ್ನು ಪೂರ್ಣಗೊಳಿಸಲು ಬಯಸುವವರಿಗೆ. ಸ್ವೀಕಾರಾರ್ಹ ರೀತಿಯಲ್ಲಿ ಅವರಿಗೆ ಆಹಾರ ಮತ್ತು ಬಟ್ಟೆಬರೆಗಳನ್ನು ಒದಗಿಸುವುದು ಮಗುವಿನ ತಂದೆಯ ಕರ್ತವ್ಯವಾಗಿದೆ. ಯಾರ ಮೇಲೂ ಅವನ ಸಾಮರ್ಥ್ಯಕ್ಕಿಂತ ಮಿಗಿಲಾದುದನ್ನು ಹೊರಿಸಲಾಗುವುದಿಲ್ಲ. ಮಗುವಿನ ಕಾರಣದಿಂದ ತಾಯಿಗೆ ತೊಂದರೆಯಾಗಬಾರದು ಮತ್ತು ಮಗುವಿನ ಕಾರಣದಿಂದ ತಂದೆಗೂ ತೊಂದರೆಯಾಗಬಾರದು. ವಾರಿಸುದಾರರಿಗೂ ಇದೇ ರೀತಿಯ ಕರ್ತವ್ಯಗಳಿವೆ. ಅವರಿಬ್ಬರು ಸಂತೃಪ್ತಿಯಿಂದ ಮತ್ತು ಸಮಾಲೋಚನೆಯಿಂದ ಮಗುವಿನ ಸ್ತನಪಾನವನ್ನು ನಿಲ್ಲಿಸಲು ಬಯಸಿದರೆ ಅವರಿಬ್ಬರ ಮೇಲೂ ದೋಷವಿಲ್ಲ. ನಿಮ್ಮ ಮಕ್ಕಳಿಗೆ ಬೇರೊಬ್ಬರಿಂದ ಸ್ತನಪಾನ ಮಾಡಿಸಲು ನೀವು ಬಯಸುವುದಾದರೆ, ಅದರಲ್ಲೂ ನಿಮಗೆ ದೋಷವಿಲ್ಲ—ಸ್ವೀಕಾರಾರ್ಹ ರೀತಿಯಲ್ಲಿ ಅವರಿಗೆ ಅವರ ವೇತನವನ್ನು ಕೊಡುವುದಾದರೆ. ಅಲ್ಲಾಹನನ್ನು ಭಯಪಡಿರಿ. ತಿಳಿಯಿರಿ! ನೀವು ಮಾಡುವ ಕರ್ಮಗಳನ್ನು ಅಲ್ಲಾಹು ನೋಡುತ್ತಿದ್ದಾನೆ.

---

وَٱلَّذِينَ يُتَوَفَّوۡنَ مِنكُمۡ وَيَذَرُونَ أَزۡوَٰجٗا يَتَرَبَّصۡنَ بِأَنفُسِهِنَّ أَرۡبَعَةَ أَشۡهُرٖ وَعَشۡرٗاۖ فَإِذَا بَلَغۡنَ أَجَلَهُنَّ فَلَا جُنَاحَ عَلَيۡكُمۡ فِيمَا فَعَلۡنَ فِيٓ أَنفُسِهِنَّ بِٱلۡمَعۡرُوفِۗ وَٱللَّهُ بِمَا تَعۡمَلُونَ خَبِيرٞ ٢٣٤

234. ನಿಮ್ಮಲ್ಲಿ ಯಾರಾದರೂ ತಮ್ಮ ಪತ್ನಿಯರನ್ನು ಬಿಟ್ಟು ನಿಧನರಾದರೆ, ಅವರು (ಪತ್ನಿಯರು) ಸ್ವಯಂ ನಾಲ್ಕು ತಿಂಗಳು ಮತ್ತು ಹತ್ತು ದಿನ ದೀಕ್ಷಾಕಾಲ (ಇದ್ದ) ಆಚರಿಸಬೇಕು. ನಂತರ ಅವರ (ದೀಕ್ಷಾಕಾಲದ) ಅವಧಿ ಪೂರ್ಣವಾದರೆ, ಸ್ವೀಕಾರಾರ್ಹ ರೀತಿಯಲ್ಲಿ ಅವರೇನು ಮಾಡುತ್ತಾರೋ ಅದರಲ್ಲಿ ನಿಮಗೆ ದೋಷವಿಲ್ಲ. ನೀವು ಮಾಡುವ ಕರ್ಮಗಳನ್ನು ಅಲ್ಲಾಹು ಸೂಕ್ಷ್ಮವಾಗಿ ತಿಳಿಯುತ್ತಿದ್ದಾನೆ.

---

وَلَا جُنَاحَ عَلَيۡكُمۡ فِيمَا عَرَّضۡتُم بِهِۦ مِنۡ خِطۡبَةِ ٱلنِّسَآءِ أَوۡ أَكۡنَنتُمۡ فِيٓ أَنفُسِكُمۡۚ

235. ನೀವು ಆ ಮಹಿಳೆಯರನ್ನು ವಿವಾಹವಾಗಲು ಬಯಸುತ್ತೀರೆಂದು ಸೂಚ್ಯವಾಗಿ ತಿಳಿಸಿದರೆ ಅಥವಾ ಅದನ್ನು ಮನಸ್ಸಿನೊಳಗೆ

عَلِمَ ٱللَّهُ أَنَّكُمْ سَتَذْكُرُونَهُنَّ وَلَٰكِن لَّا تُوَاعِدُوهُنَّ سِرًّا إِلَّآ أَن تَقُولُوا۟ قَوْلًا مَّعْرُوفًا ۚ وَلَا تَعْزِمُوا۟ عُقْدَةَ ٱلنِّكَاحِ حَتَّىٰ يَبْلُغَ ٱلْكِتَٰبُ أَجَلَهُۥ ۚ وَٱعْلَمُوٓا۟ أَنَّ ٱللَّهَ يَعْلَمُ مَا فِىٓ أَنفُسِكُمْ فَٱحْذَرُوهُ ۚ وَٱعْلَمُوٓا۟ أَنَّ ٱللَّهَ غَفُورٌ حَلِيمٌ ﴿٢٣٥﴾

ಬಚ್ಚಿಟ್ಟರೆ ಅದರಲ್ಲಿ ನಿಮಗೇನೂ ದೋಷವಿಲ್ಲ.[1] ನೀವು ಅವರ ಬಗ್ಗೆ ಯೋಚಿಸುತ್ತೀರೆಂದು ಅಲ್ಲಾಹನಿಗೆ ತಿಳಿದಿದೆ. ಆದರೆ ರಹಸ್ಯವಾಗಿ ಅವರಿಗೆ ಯಾವುದೇ ಭರವಸೆ ನೀಡಬೇಡಿ. ನೀವು ಅವರೊಡನೆ ಉತ್ತಮ ಮಾತುಗಳನ್ನಾಡಬಹುದು. ಅವರ (ದೀಕ್ಷಾಕಾಲದ) ಅವಧಿ ಪೂರ್ಣವಾಗುವ ತನಕ ವಿವಾಹ ಕರಾರು ಮಾಡಿಕೊಳ್ಳಲು ದೃಢನಿರ್ಧಾರ ತೆಗೆದುಕೊಳ್ಳಬೇಡಿ. ತಿಳಿಯಿರಿ! ನಿಮ್ಮ ಮನಸ್ಸಿನಲ್ಲಿರುವುದನ್ನು ಅಲ್ಲಾಹು ತಿಳಿಯುತ್ತಾನೆ. ಆದ್ದರಿಂದ ಅವನನ್ನು ಭಯಪಡಿರಿ. ತಿಳಿಯಿರಿ! ಅಲ್ಲಾಹು ಕ್ಷಮಿಸುವವನು ಮತ್ತು ಸಹಿಷ್ಣುತೆಯುಳ್ಳವನಾಗಿದ್ದಾನೆ.

---

لَّا جُنَاحَ عَلَيْكُمْ إِن طَلَّقْتُمُ ٱلنِّسَآءَ مَا لَمْ تَمَسُّوهُنَّ أَوْ تَفْرِضُوا۟ لَهُنَّ فَرِيضَةً ۚ وَمَتِّعُوهُنَّ عَلَى ٱلْمُوسِعِ قَدَرُهُۥ وَعَلَى ٱلْمُقْتِرِ قَدَرُهُۥ مَتَٰعًۢا بِٱلْمَعْرُوفِ ۖ حَقًّا عَلَى ٱلْمُحْسِنِينَ ﴿٢٣٦﴾

**236.** ನೀವು ನಿಮ್ಮ ಪತ್ನಿಯರನ್ನು ಸೇರುವುದಕ್ಕೆ ಮೊದಲು ಅಥವಾ ಅವರಿಗೆ ವಧುದಕ್ಷಿಣೆಯನ್ನು ನಿಶ್ಚಯಿಸುವುದಕ್ಕೆ ಮೊದಲು ವಿಚ್ಛೇದನ ನೀಡಿದರೆ, ಅದರಲ್ಲಿ ನಿಮಗೇನೂ ದೋಷವಿಲ್ಲ. ಆದರೆ ಅವರಿಗೆ ಏನಾದರೂ ಪರಿಹಾರವನ್ನು ನೀಡಿರಿ. ಶ್ರೀಮಂತನು ತನ್ನ ಶಕ್ತಿಗೆ ಅನುಗುಣವಾಗಿ ಮತ್ತು ಬಡವನು ತನ್ನ ಶಕ್ತಿಗೆ ಅನುಗುಣವಾಗಿ ಸ್ವೀಕಾರಾರ್ಹ ರೀತಿಯಲ್ಲಿ ಏನಾದರೂ ನೀಡಲಿ. ಇದು ಒಳಿತು ಮಾಡುವವರ ಕರ್ತವ್ಯವಾಗಿದೆ.

---

وَإِن طَلَّقْتُمُوهُنَّ مِن قَبْلِ أَن تَمَسُّوهُنَّ وَقَدْ فَرَضْتُمْ لَهُنَّ فَرِيضَةً فَنِصْفُ مَا فَرَضْتُمْ إِلَّآ أَن يَعْفُونَ أَوْ يَعْفُوَا۟ ٱلَّذِى بِيَدِهِۦ عُقْدَةُ ٱلنِّكَاحِ ۚ وَأَن تَعْفُوٓا۟ أَقْرَبُ لِلتَّقْوَىٰ ۚ وَلَا تَنسَوُا۟ ٱلْفَضْلَ بَيْنَكُمْ ۚ إِنَّ ٱللَّهَ بِمَا تَعْمَلُونَ بَصِيرٌ ﴿٢٣٧﴾

**237.** ನೀವು ನಿಮ್ಮ ಪತ್ನಿಯರನ್ನು ಸೇರುವುದಕ್ಕೆ ಮೊದಲು ಅವರಿಗೆ ವಿಚ್ಛೇದನ ನೀಡಿದರೆ, ಮತ್ತು ಈಗಾಗಲೇ ನೀವು ಅವರಿಗೆ ವಧುದಕ್ಷಿಣೆಯನ್ನು ನಿಶ್ಚಯಿಸಿದ್ದರೆ, ನಿಶ್ಚಯಿಸಿದ ವಧುದಕ್ಷಿಣೆಯ ಅರ್ಧವನ್ನು ಅವರಿಗೆ ಕೊಟ್ಟುಬಿಡಿ. ಆದರೆ, ಅವರು ಮಾಫಿ ಮಾಡಿದರೆ ಹೊರತು.[2] ಅಥವಾ ವಿವಾಹ ಕರಾರು ಯಾರ ಕೈಯಲ್ಲಿದೆಯೋ ಅವನು ಮಾಫಿ ಮಾಡಿದರೆ ಹೊರತು.[3] ನೀವು ಮಾಫಿ ಮಾಡುವುದು ದೇವಭಯಕ್ಕೆ ಹೆಚ್ಚು ನಿಕಟವಾಗಿದೆ. ನೀವು ನಿಮ್ಮ ನಡುವಿನ ಸೌಜನ್ಯವನ್ನು ಮರೆಯಬೇಡಿ. ನಿಶ್ಚಯವಾಗಿಯೂ ಅಲ್ಲಾಹು ನೀವು ಮಾಡುತ್ತಿರುವ ಕರ್ಮಗಳನ್ನು ನೋಡುತ್ತಿದ್ದಾನೆ.

---

[1] ಇಲ್ಲಿ ಉದ್ದೇಶಿಸಿರುವುದು ಮೂರು ವಿಚ್ಛೇದನಗಳನ್ನು (ತಲಾಕ್) ಪಡೆದ ಮಹಿಳೆಯ ಬಗ್ಗೆ. ಅವರೊಡನೆ ಸೂಚ್ಯವಾಗಿ, ಅಂದರೆ ನನಗೆ ಒಬ್ಬ ಮಹಿಳೆಯನ್ನು ವಿವಾಹವಾಗುವ ಇರಾದೆಯಿದೆ, ಅಥವಾ ನಾನು ಒಬ್ಬ ಉತ್ತಮ ಮಹಿಳೆಯನ್ನು ಹುಡುಕುತ್ತಿದ್ದೇನೆ ಎಂದು ಹೇಳಬಹುದು. ಆದರೆ ಇದ್ದ (ದೀಕ್ಷಾಕಾಲ) ಮುಗಿಯುವ ತನಕ ರಹಸ್ಯ ಭರವಸೆಗಳನ್ನು ಅಥವಾ ವಿವಾಹ ಒಪ್ಪಂದವನ್ನು ಮಾಡಿಕೊಳ್ಳಬಾರದು. ಇನ್ನು ಒಂದು ಅಥವಾ ಎರಡು ವಿಚ್ಛೇದನ (ತಲಾಕ್) ಪಡೆದ ಮಹಿಳೆಯೊಡನೆ ಸೂಚ್ಯವಾಗಿಯೂ ವಿವಾಹದ ಬಗ್ಗೆ ಪ್ರಸ್ತಾಪವೆತ್ತಬಾರದು. ಏಕೆಂದರೆ ಆ ಅವಧಿಯಲ್ಲಿ ಆಕೆಯ ಗಂಡ ಆಕೆಯನ್ನು ಮರಳಿ ಸ್ವೀಕರಿಸುವ ಸಾಧ್ಯತೆಯಿದೆ.

[2] ಅಂದರೆ ಪತ್ನಿ ವಧುದಕ್ಷಿಣೆಯ ಅರ್ಧ ಹಕ್ಕು ತನಗೆ ಬೇಡವೆಂದು ಹೇಳಿ ವಧುದಕ್ಷಿಣೆಯನ್ನು ಪೂರ್ಣವಾಗಿ ಹಿಂದಿರುಗಿಸುವುದು.

[3] ವಿವಾಹ ಕರಾರು ಕೈಯಲ್ಲಿರುವವನು ಎಂದರೆ ಗಂಡ. ಅಂದರೆ, ಅವನು ವಧುದಕ್ಷಿಣೆಯ ಅರ್ಧ ಭಾಗವನ್ನು ಪಡೆಯುವ ತನ್ನ ಹಕ್ಕನ್ನು ಮಾಫಿ ಮಾಡಿ ವಧುದಕ್ಷಿಣೆಯನ್ನು ಸಂಪೂರ್ಣವಾಗಿ ಹೆಂಡತಿಗೆ ಬಿಟ್ಟುಕೊಡುವುದು.

238. ನಮಾಝ್‌ಗಳನ್ನು ಸಂರಕ್ಷಣೆ ಮಾಡಿರಿ. ವಿಶೇಷವಾಗಿ ಮಧ್ಯಮ (ಅಸರ್) ನಮಾಝನ್ನು. ಅಲ್ಲಾಹನ ಮುಂದೆ ವಿಧೇಯತೆಯಿಂದ ನಿಲ್ಲಿರಿ.

حَٰفِظُواْ عَلَى ٱلصَّلَوَٰتِ وَٱلصَّلَوٰةِ ٱلۡوُسۡطَىٰ وَقُومُواْ لِلَّهِ قَٰنِتِينَ ٢٣٨

239. ನಿಮಗೆ ಭಯವಿದ್ದರೆ ನಡೆಯುತ್ತಾ ಅಥವಾ ಸವಾರಿ ಮಾಡುತ್ತಾ (ನಮಾಝ್ ನಿರ್ವಹಿಸಿರಿ). ನೀವು ಭಯಮುಕ್ತರಾದರೆ ನಿಮಗೆ ತಿಳಿಯದಿರುವುದನ್ನು ಅಲ್ಲಾಹು ನಿಮಗೆ ಕಲಿಸಿಕೊಟ್ಟಂತೆ ಅವನನ್ನು ಸ್ಮರಿಸಿರಿ.

فَإِنۡ خِفۡتُمۡ فَرِجَالًا أَوۡ رُكۡبَانٗاۖ فَإِذَآ أَمِنتُمۡ فَٱذۡكُرُواْ ٱللَّهَ كَمَا عَلَّمَكُم مَّا لَمۡ تَكُونُواْ تَعۡلَمُونَ ٢٣٩

240. ನಿಮ್ಮಲ್ಲಿ ಯಾರಾದರೂ ತಮ್ಮ ಪತ್ನಿಯರನ್ನು ಬಿಟ್ಟು ನಿಧನರಾದರೆ, ಪತ್ನಿಯರನ್ನು ಒಂದು ವರ್ಷದ ತನಕ ಹೊರ ಕಳುಹಿಸದೆ ಅವರನ್ನು ನೋಡಿಕೊಳ್ಳಲು ಉಯಿಲು ಮಾಡಬೇಕು. ಅವರೇನಾದರೂ (ಸ್ವಯಂ) ಹೊರಟುಹೋದರೆ, ಸ್ವೀಕಾರಾರ್ಹ ರೀತಿಯಲ್ಲಿ ಅವರೇನು ಮಾಡುತ್ತಾರೋ ಅದರಲ್ಲಿ ನಿಮಗೆ ದೋಷವಿಲ್ಲ. ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَٱلَّذِينَ يُتَوَفَّوۡنَ مِنكُمۡ وَيَذَرُونَ أَزۡوَٰجٗا وَصِيَّةٗ لِّأَزۡوَٰجِهِم مَّتَٰعًا إِلَى ٱلۡحَوۡلِ غَيۡرَ إِخۡرَاجٖۚ فَإِنۡ خَرَجۡنَ فَلَا جُنَاحَ عَلَيۡكُمۡ فِي مَا فَعَلۡنَ فِيٓ أَنفُسِهِنَّ مِن مَّعۡرُوفٖۗ وَٱللَّهُ عَزِيزٌ حَكِيمٞ ٢٤٠

241. ವಿಚ್ಛೇದಿತ ಮಹಿಳೆಯರಿಗೆ ಸ್ವೀಕಾರಾರ್ಹ ರೀತಿಯಲ್ಲಿ ಏನಾದರೂ ಪರಿಹಾರವನ್ನು ಕೊಡಬೇಕಾಗಿದೆ. ಇದು ದೇವಭಯವುಳ್ಳವರ ಕರ್ತವ್ಯವಾಗಿದೆ.

وَلِلۡمُطَلَّقَٰتِ مَتَٰعُۢ بِٱلۡمَعۡرُوفِۖ حَقًّا عَلَى ٱلۡمُتَّقِينَ ٢٤١

242. ಈ ರೀತಿ ಅಲ್ಲಾಹು ತನ್ನ ನಿಯಮಗಳನ್ನು ನಿಮಗೆ ಸ್ಪಷ್ಟವಾಗಿ ವಿವರಿಸಿಕೊಡುತ್ತಾನೆ. ನೀವು ಅರ್ಥಮಾಡಿಕೊಳ್ಳುವುದಕ್ಕಾಗಿ.

كَذَٰلِكَ يُبَيِّنُ ٱللَّهُ لَكُمۡ ءَايَٰتِهِۦ لَعَلَّكُمۡ تَعۡقِلُونَ ٢٤٢

243. ಸಹಸ್ರಾರು ಸಂಖ್ಯೆಯ ಜನರು ಸಾವಿನ ಭಯದಿಂದ ತಮ್ಮ ಮನೆಗಳನ್ನು ಬಿಟ್ಟು ಓಡಿದ್ದನ್ನು ನೀವು ನೋಡಿಲ್ಲವೇ?[1] ಆಗ ಅಲ್ಲಾಹು ಅವರೊಡನೆ, "ಸಾಯಿರಿ" ಎಂದು ಹೇಳಿದನು. ನಂತರ ಅವನು ಅವರಿಗೆ ಜೀವ ನೀಡಿದನು. ನಿಶ್ಚಯವಾಗಿಯೂ ಅಲ್ಲಾಹನಿಗೆ ಜನರ ಮೇಲೆ ಬಹಳ ಔದಾರ್ಯವಿದೆ. ಆದರೆ ಜನರಲ್ಲಿ ಹೆಚ್ಚಿನವರು ಕೃತಜ್ಞರಾಗುವುದಿಲ್ಲ.

أَلَمۡ تَرَ إِلَى ٱلَّذِينَ خَرَجُواْ مِن دِيَٰرِهِمۡ وَهُمۡ أُلُوفٌ حَذَرَ ٱلۡمَوۡتِ فَقَالَ لَهُمُ ٱللَّهُ مُوتُواْ ثُمَّ أَحۡيَٰهُمۡۚ إِنَّ ٱللَّهَ لَذُو فَضۡلٍ عَلَى ٱلنَّاسِ وَلَٰكِنَّ أَكۡثَرَ ٱلنَّاسِ لَا يَشۡكُرُونَ ٢٤٣

244. ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡಿರಿ. ತಿಳಿಯಿರಿ! ನಿಶ್ಚಯವಾಗಿಯೂ ಅಲ್ಲಾಹು ಎಲ್ಲವನ್ನೂ ಕೇಳುವವನು ಮತ್ತು ತಿಳಿದವನಾಗಿದ್ದಾನೆ.

وَقَٰتِلُواْ فِي سَبِيلِ ٱللَّهِ وَٱعۡلَمُوٓاْ أَنَّ ٱللَّهَ سَمِيعٌ عَلِيمٞ ٢٤٤

[1] ಇವರು ಯಾರು ಎಂಬುದರ ಬಗ್ಗೆ ಅಧಿಕೃತವಾದ ಯಾವುದೇ ಉಲ್ಲೇಖಗಳಿಲ್ಲ. ಕುರ್‌ಆನ್ ವ್ಯಾಖ್ಯಾನ ಗ್ರಂಥಗಳಲ್ಲಿ ಇವರನ್ನು ಇಸ್ರಾಯೇ-ಲರಲ್ಲಿ ಸೇರಿದವರೆಂದು ಹೇಳಲಾಗಿದೆ. ಇವರಿಗೆ ಅಲ್ಲಾಹು ಪುನಃ ಜೀವ ನೀಡಲು ಪ್ರವಾದಿ ಯೆಹೆಜ್ಕೇಲರ ಪ್ರಾರ್ಥನೆಯೇ ಕಾರಣವೆಂದು ಹೇಳಲಾಗಿದೆ. ಇವರು ಧರ್ಮಯುದ್ಧದಲ್ಲಿ ಪಾಲ್ಗೊಳ್ಳಲು ಕರೆದಾಗ ಅಥವಾ ಊರಲ್ಲಿ ಪ್ಲೇಗ್ ರೋಗ ಹರಡಿದಾಗ ಸಾವಿನ ಭಯದಿಂದ ಊರು ಬಿಟ್ಟು ಓಡಿದ್ದರು.

245. ಅಲ್ಲಾಹನಿಗೆ ಒಳ್ಳೆಯ ಸಾಲವನ್ನು ಕೊಡುವವರು ಯಾರು?[1] ಹಾಗಾದರೆ, ಅಲ್ಲಾಹು ಅವನಿಗೆ ಅದನ್ನು ಹಲವಾರು ಪಟ್ಟು ಹೆಚ್ಚಿಸಿಕೊಡುವನು. ಅಲ್ಲಾಹನೇ ಇಕ್ಕಟ್ಟು ಮತ್ತು ವಿಶಾಲತೆಯನ್ನು ನೀಡುವವನು. ನಿಮ್ಮನ್ನು ಅವನ ಬಳಿಗೇ ಮರಳಿಸಲಾಗುತ್ತದೆ.

مَّن ذَا ٱلَّذِي يُقۡرِضُ ٱللَّهَ قَرۡضًا حَسَنٗا فَيُضَٰعِفَهُۥ لَهُۥٓ أَضۡعَافٗا كَثِيرَةٗۚ وَٱللَّهُ يَقۡبِضُ وَيَبۡصُۜطُ وَإِلَيۡهِ تُرۡجَعُونَ ٢٤٥

246. ಮೂಸಾರ ಕಾಲಾನಂತರ ಇಸ್ರಾಯೇಲ್ ಮಕ್ಕಳಲ್ಲಿ ಸೇರಿದ ಕೆಲವು ಮುಖಂಡರನ್ನು ನೀವು ನೋಡಿಲ್ಲವೇ? ಅವರು ತಮ್ಮ ಪ್ರವಾದಿಯೊಂದಿಗೆ, "ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡಲು ನಮಗೆ ಒಬ್ಬ ರಾಜನನ್ನು ನೇಮಿಸಿಕೊಡಿ" ಎಂದು ಹೇಳಿದ ಸಂದರ್ಭ. ಅವರು (ಪ್ರವಾದಿ) ಹೇಳಿದರು: "ನಿಮ್ಮ ಮೇಲೆ ಯುದ್ಧವು ಕಡ್ಡಾಯವಾದ ನಂತರ ನೀವೇನಾದರೂ ಯುದ್ಧ ಮಾಡದವರಾಗಿ ಬಿಟ್ಟರೆ?" ಅವರು ಹೇಳಿದರು: "ನಮ್ಮನ್ನು ನಮ್ಮ ಮನೆಗಳಿಂದ ಓಡಿಸಲಾಗಿರುವ ಮತ್ತು ನಮ್ಮಿಂದ ನಮ್ಮ ಮಕ್ಕಳನ್ನು ಬೇರ್ಪಡಿಸಲಾಗಿರುವ ಈ ಸ್ಥಿತಿಯಲ್ಲಿ ನಾವು ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡದಿರಲು ಸಾಧ್ಯವೇ?" ಆದರೆ ಅವರ ಮೇಲೆ ಯುದ್ಧವು ಕಡ್ಡಾಯವಾದಾಗ ಅವರಲ್ಲಿ ಕೆಲವರ ಹೊರತು ಉಳಿದವರೆಲ್ಲರೂ ಮುಖ ತಿರುಗಿಸಿ ನಡೆದರು. ಅಲ್ಲಾಹನಿಗೆ ಅಕ್ರಮಿಗಳ ಬಗ್ಗೆ ಬಹಳ ಚೆನ್ನಾಗಿ ತಿಳಿದಿದೆ.

أَلَمۡ تَرَ إِلَى ٱلۡمَلَإِ مِنۢ بَنِيٓ إِسۡرَٰٓءِيلَ مِنۢ بَعۡدِ مُوسَىٰٓ إِذۡ قَالُواْ لِنَبِيّٖ لَّهُمُ ٱبۡعَثۡ لَنَا مَلِكٗا نُّقَٰتِلۡ فِي سَبِيلِ ٱللَّهِۖ قَالَ هَلۡ عَسَيۡتُمۡ إِن كُتِبَ عَلَيۡكُمُ ٱلۡقِتَالُ أَلَّا تُقَٰتِلُواْۖ قَالُواْ وَمَا لَنَآ أَلَّا نُقَٰتِلَ فِي سَبِيلِ ٱللَّهِ وَقَدۡ أُخۡرِجۡنَا مِن دِيَٰرِنَا وَأَبۡنَآئِنَاۖ فَلَمَّا كُتِبَ عَلَيۡهِمُ ٱلۡقِتَالُ تَوَلَّوۡاْ إِلَّا قَلِيلٗا مِّنۡهُمۡۚ وَٱللَّهُ عَلِيمُۢ بِٱلظَّٰلِمِينَ ٢٤٦

247. ಅವರೊಡನೆ ಅವರ ಪ್ರವಾದಿ ಹೇಳಿದರು: "ಅಲ್ಲಾಹು ನಿಮಗೆ ತಾಲೂತರನ್ನು (ಸೌಲ್) ರಾಜನಾಗಿ ನೇಮಿಸಿದ್ದಾನೆ." ಅವರು ಹೇಳಿದರು: "ಅವರು ನಮಗೆ ರಾಜನಾಗಲು ಹೇಗೆ ಸಾಧ್ಯ? ರಾಜ ಪದವಿಗೆ ಅವರಿಗಿಂತಲೂ ಹೆಚ್ಚು ಅರ್ಹತೆ ನಮಗಿದೆ. ಅವರಿಗೆ ಹೇರಳ ಆಸ್ತಿಪಾಸ್ತಿಯನ್ನೂ ನೀಡಲಾಗಿಲ್ಲ." ಅವರು (ಪ್ರವಾದಿ) ಹೇಳಿದರು: "ಅಲ್ಲಾಹು ನಿಮಗಿಂತ ಅವರನ್ನೇ ಆಯ್ಕೆ ಮಾಡಿದ್ದಾನೆ ಮತ್ತು ಅವರಿಗೆ ಬೌದ್ಧಿಕ ಹಾಗೂ ದೈಹಿಕ ಶ್ರೇಷ್ಠತೆಯನ್ನು ನೀಡಿದ್ದಾನೆ. ಅಲ್ಲಾಹು ಅವನು ಇಚ್ಛಿಸುವವರಿಗೆ ಅವನ ರಾಜ ಪದವಿ ನೀಡುತ್ತಾನೆ. ಅಲ್ಲಾಹು ವಿಶಾಲನು ಮತ್ತು ಸರ್ವಜ್ಞನಾಗಿದ್ದಾನೆ."

وَقَالَ لَهُمۡ نَبِيُّهُمۡ إِنَّ ٱللَّهَ قَدۡ بَعَثَ لَكُمۡ طَالُوتَ مَلِكٗاۚ قَالُوٓاْ أَنَّىٰ يَكُونُ لَهُ ٱلۡمُلۡكُ عَلَيۡنَا وَنَحۡنُ أَحَقُّ بِٱلۡمُلۡكِ مِنۡهُ وَلَمۡ يُؤۡتَ سَعَةٗ مِّنَ ٱلۡمَالِۚ قَالَ إِنَّ ٱللَّهَ ٱصۡطَفَىٰهُ عَلَيۡكُمۡ وَزَادَهُۥ بَسۡطَةٗ فِي ٱلۡعِلۡمِ وَٱلۡجِسۡمِۖ وَٱللَّهُ يُؤۡتِي مُلۡكَهُۥ مَن يَشَآءُۚ وَٱللَّهُ وَٰسِعٌ عَلِيمٞ ٢٤٧

248. ಅವರೊಡನೆ ಅವರ ಪ್ರವಾದಿ ಹೇಳಿದರು: "ಆ ಪೆಟ್ಟಿಗೆ ನಿಮ್ಮ ಬಳಿಗೆ ಬರುವುದು ಅವರ ರಾಜ ಪದವಿಯ ಸಂಕೇತವಾಗಿದೆ. ಅದರಲ್ಲಿ ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಮನಃಶಾಂತಿ ಮತ್ತು ಮೂಸಾ ಹಾಗೂ ಹಾರೂನರ ಕುಟುಂಬಗಳು

وَقَالَ لَهُمۡ نَبِيُّهُمۡ إِنَّ ءَايَةَ مُلۡكِهِۦٓ أَن يَأۡتِيَكُمُ ٱلتَّابُوتُ فِيهِ سَكِينَةٞ مِّن رَّبِّكُمۡ وَبَقِيَّةٞ مِّمَّا تَرَكَ ءَالُ مُوسَىٰ وَءَالُ هَٰرُونَ تَحۡمِلُهُ ٱلۡمَلَٰٓئِكَةُۚ إِنَّ فِي ذَٰلِكَ لَأٓيَةٗ لَّكُمۡ إِن كُنتُم مُّؤۡمِنِينَ ٢٤٨

[1] ಒಳ್ಳೆಯ ಸಾಲ ಎಂದರೆ ಅಲ್ಲಾಹನ ಮಾರ್ಗದಲ್ಲಿ ಮಾಡುವ ದಾನಧರ್ಮಗಳು.

ಬಿಟ್ಟು ಹೋದ ಅವಶೇಷಗಳಿವೆ. ಅದನ್ನು ದೇವದೂತರು ವಹಿಸಿಕೊಂಡು ಬರುತ್ತಾರೆ. ನೀವು ಸತ್ಯವಿಶ್ವಾಸಿಗಳಾಗಿದ್ದರೆ ನಿಶ್ಚಯವಾಗಿಯೂ ನಿಮಗೆ ಅದರಲ್ಲಿ ಸ್ಪಷ್ಟ ದೃಷ್ಟಾಂತವಿದೆ."

---

**249.** ನಂತರ ತಾಲೂತ್ (ಸೌಲ್) ಸೈನ್ಯದೊಂದಿಗೆ ಹೊರಟಾಗ ಹೇಳಿದರು: "ನಿಶ್ಚಯವಾಗಿಯೂ ಅಲ್ಲಾಹು ಒಂದು ನದಿಯ ಮೂಲಕ ನಿಮ್ಮನ್ನು ಪರೀಕ್ಷಿಸುವನು. ಯಾರು ಅದರ ನೀರನ್ನು ಕುಡಿಯುತ್ತಾನೋ ಅವನು ನನ್ನವನಲ್ಲ. ಯಾರು ಅದರ ರುಚಿ ನೋಡುವುದಿಲ್ಲವೋ ಅವನು ನನ್ನವನು; ಆದರೆ ತನ್ನ ಕೈಯಿಂದ ಒಂದು ಬೊಗಸೆ ಮಾತ್ರ ತೆಗೆದುಕೊಂಡವನ ಹೊರತು." ಆದರೆ ಅವರಲ್ಲಿ ಕೆಲವರ ಹೊರತು ಉಳಿದವರೆಲ್ಲರೂ ಅದರ ನೀರನ್ನು ಕುಡಿದರು. ನಂತರ ತಾಲೂತ್ ಮತ್ತು ಅವರ ಜೊತೆಗಿರುವ ಸತ್ಯ-ವಿಶ್ವಾಸಿಗಳು ಆ ನದಿಯನ್ನು ದಾಟಿದಾಗ ಅವರು ಹೇಳಿದರು: "ಇಂದು ನಮಗೆ ಜಾಲೂತ್ (ಗೋಲಿಯತ್) ಮತ್ತು ಅವನ ಸೈನ್ಯದೊಡನೆ ಹೋರಾಡುವ ಶಕ್ತಿಯಿಲ್ಲ." ಆದರೆ ನಾವು ಅಲ್ಲಾಹನನ್ನು ಭೇಟಿಯಾಗಲಿದ್ದೇವೆ ಎಂಬ ದೃಢವಿಶ್ವಾಸ-ವಿದ್ದವರು ಹೇಳಿದರು: "ಎಷ್ಟೆಷ್ಟು ಚಿಕ್ಕ ಸೈನ್ಯಗಳು ಅಲ್ಲಾಹನ ಅಪ್ಪಣೆಯೊಂದಿಗೆ ಎಷ್ಟೆಷ್ಟು ದೊಡ್ಡ ಸೈನ್ಯಗಳನ್ನು ಸೋಲಿಸಿವೆ! ಅಲ್ಲಾಹು ತಾಳ್ಮೆಯುಳ್ಳವರ ಜೊತೆಗಿದ್ದಾನೆ."

فَلَمَّا فَصَلَ طَالُوتُ بِٱلۡجُنُودِ قَالَ إِنَّ ٱللَّهَ مُبۡتَلِيكُم بِنَهَرٖ فَمَن شَرِبَ مِنۡهُ فَلَيۡسَ مِنِّي وَمَن لَّمۡ يَطۡعَمۡهُ فَإِنَّهُۥ مِنِّيٓ إِلَّا مَنِ ٱغۡتَرَفَ غُرۡفَةَۢ بِيَدِهِۦۚ فَشَرِبُواْ مِنۡهُ إِلَّا قَلِيلٗا مِّنۡهُمۡۚ فَلَمَّا جَاوَزَهُۥ هُوَ وَٱلَّذِينَ ءَامَنُواْ مَعَهُۥ قَالُواْ لَا طَاقَةَ لَنَا ٱلۡيَوۡمَ بِجَالُوتَ وَجُنُودِهِۦۚ قَالَ ٱلَّذِينَ يَظُنُّونَ أَنَّهُم مُّلَٰقُواْ ٱللَّهِ كَم مِّن فِئَةٖ قَلِيلَةٍ غَلَبَتۡ فِئَةٗ كَثِيرَةَۢ بِإِذۡنِ ٱللَّهِۗ وَٱللَّهُ مَعَ ٱلصَّٰبِرِينَ ﴿٢٤٩﴾

---

**250.** ನಂತರ ಜಾಲೂತ್ (ಗೋಲಿಯತ್) ಮತ್ತು ಅವನ ಸೈನ್ಯಕ್ಕೆ ಮುಖಾಮುಖಿಯಾಗಿ ನಿಂತಾಗ ಅವರು ಹೀಗೆ ಪ್ರಾರ್ಥಿಸಿದರು: "ಓ ನಮ್ಮ ಪರಿಪಾಲಕನೇ! ನಮಗೆ ಸ್ಥೈರ್ಯವನ್ನು ದಯಪಾಲಿಸು, ನಮ್ಮ ಪಾದಗಳನ್ನು ದೃಢವಾಗಿ ನಿಲ್ಲಿಸು ಮತ್ತು ಸತ್ಯನಿಷೇಧಿಗಳಾದ ಜನರ ವಿರುದ್ಧ ನಮಗೆ ಸಹಾಯ ಮಾಡು."

وَلَمَّا بَرَزُواْ لِجَالُوتَ وَجُنُودِهِۦ قَالُواْ رَبَّنَآ أَفۡرِغۡ عَلَيۡنَا صَبۡرٗا وَثَبِّتۡ أَقۡدَامَنَا وَٱنصُرۡنَا عَلَى ٱلۡقَوۡمِ ٱلۡكَٰفِرِينَ ﴿٢٥٠﴾

---

**251.** ನಂತರ ಅಲ್ಲಾಹನ ಅಪ್ಪಣೆಯಿಂದ ಅವರು ಅವರನ್ನು (ವೈರಿಗಳನ್ನು) ಸೋಲಿಸಿದರು. ದಾವೂದ್ ಜಾಲೂತನನ್ನು ಕೊಂದರು. ಅಲ್ಲಾಹು ಅವರಿಗೆ (ದಾವೂದರಿಗೆ) ಸಾಮ್ರಾಜ್ಯವನ್ನು ಮತ್ತು ವಿವೇಕವನ್ನು ದಯಪಾಲಿಸಿದನು ಹಾಗೂ ಅವನು ಇಚ್ಛಿಸಿದಷ್ಟು ವಿಷಯಗಳನ್ನು ಅವರಿಗೆ ಕಲಿಸಿಕೊಟ್ಟನು. ಅಲ್ಲಾಹು ಕೆಲವು ಜನರಿಗೆ ಇತರ ಕೆಲವರ ಮೂಲಕ ತಡೆಯೊ-ಡ್ಡದಿರುತ್ತಿದ್ದರೆ ಭೂಲೋಕದಲ್ಲಿ ಅರಾಜಕತೆ ತಾಂಡವವಾಡು-ತ್ತಿತ್ತು. ಆದರೆ ಅಲ್ಲಾಹು ಸರ್ವಲೋಕದವರ ಮೇಲೆ ಬಹಳ ಔದಾರ್ಯವುಳ್ಳವನಾಗಿದ್ದಾನೆ.

فَهَزَمُوهُم بِإِذۡنِ ٱللَّهِ وَقَتَلَ دَاوُۥدُ جَالُوتَ وَءَاتَىٰهُ ٱللَّهُ ٱلۡمُلۡكَ وَٱلۡحِكۡمَةَ وَعَلَّمَهُۥ مِمَّا يَشَآءُۗ وَلَوۡلَا دَفۡعُ ٱللَّهِ ٱلنَّاسَ بَعۡضَهُم بِبَعۡضٖ لَّفَسَدَتِ ٱلۡأَرۡضُ وَلَٰكِنَّ ٱللَّهَ ذُو فَضۡلٍ عَلَى ٱلۡعَٰلَمِينَ ﴿٢٥١﴾

252. ಇವೆಲ್ಲವೂ ಅಲ್ಲಾಹನ ವಚನಗಳಾಗಿವೆ. ನಾವು ಇವುಗಳನ್ನು ಸತ್ಯ ಸಮೇತ ನಿಮಗೆ ಓದಿಕೊಡುತ್ತಿದ್ದೇವೆ. ನಿಶ್ಚಯವಾಗಿಯೂ ನೀವು ಸಂದೇಶವಾಹಕರಲ್ಲಿ ಒಬ್ಬರಾಗಿದ್ದೀರಿ.

تِلۡكَ ءَايَٰتُ ٱللَّهِ نَتۡلُوهَا عَلَيۡكَ بِٱلۡحَقِّۚ وَإِنَّكَ لَمِنَ ٱلۡمُرۡسَلِينَ ﴿٢٥٢﴾

253. ಆ ಸಂದೇಶವಾಹಕರಲ್ಲಿ ಕೆಲವರನ್ನು ನಾವು ಇತರ ಕೆಲವರಿಗಿಂತ ಶ್ರೇಷ್ಠಗೊಳಿಸಿದ್ದೇವೆ. ಅವರಲ್ಲಿ ಅಲ್ಲಾಹು (ನೇರವಾಗಿ) ಮಾತನಾಡಿದವರಿದ್ದಾರೆ. ಅವರಲ್ಲಿ ಕೆಲವರ ಪದವಿಗಳನ್ನು ಅವನು ಎತ್ತರಿಸಿದ್ದಾನೆ. ಮರ್ಯಮರ ಮಗ ಈಸಾರಿಗೆ ನಾವು ಪವಾಡಗಳನ್ನು ನೀಡಿದ್ದೇವೆ ಮತ್ತು ಪವಿತ್ರಾತ್ಮನ ಮೂಲಕ ಅವರನ್ನು ಬೆಂಬಲಿಸಿದ್ದೇವೆ. ಅಲ್ಲಾಹು ಇಚ್ಛಿಸುತ್ತಿದ್ದರೆ ಅವರ ನಂತರದವರು ಅವರಿಗೆ ಸ್ಪಷ್ಟ ಸಾಕ್ಷ್ಯಾಧಾರಗಳು ಬಂದ ಬಳಿಕವೂ ಪರಸ್ಪರ ಹೊಡೆದಾಡುತ್ತಿರಲಿಲ್ಲ. ಆದರೆ ಅವರು ಭಿನ್ನಮತ ತಳೆದರು. ಅವರಲ್ಲಿ ಕೆಲವರು ಸತ್ಯವಿಶ್ವಾಸಿಗಳಾದರು ಮತ್ತು ಕೆಲವರು ಸತ್ಯನಿಷೇಧಿಗಳಾದರು. ಅಲ್ಲಾಹು ಇಚ್ಛಿಸುತ್ತಿದ್ದರೆ ಅವರು ಪರಸ್ಪರ ಹೊಡೆದಾಡುತ್ತಿರಲಿಲ್ಲ. ಆದರೆ ಅಲ್ಲಾಹು ಅವನು ಬಯಸುವುದನ್ನು ಮಾಡುತ್ತಾನೆ.

۞تِلۡكَ ٱلرُّسُلُ فَضَّلۡنَا بَعۡضَهُمۡ عَلَىٰ بَعۡضٖۘ مِّنۡهُم مَّن كَلَّمَ ٱللَّهُۖ وَرَفَعَ بَعۡضَهُمۡ دَرَجَٰتٖۚ وَءَاتَيۡنَا عِيسَى ٱبۡنَ مَرۡيَمَ ٱلۡبَيِّنَٰتِ وَأَيَّدۡنَٰهُ بِرُوحِ ٱلۡقُدُسِۗ وَلَوۡ شَآءَ ٱللَّهُ مَا ٱقۡتَتَلَ ٱلَّذِينَ مِنۢ بَعۡدِهِم مِّنۢ بَعۡدِ مَا جَآءَتۡهُمُ ٱلۡبَيِّنَٰتُ وَلَٰكِنِ ٱخۡتَلَفُواْ فَمِنۡهُم مَّنۡ ءَامَنَ وَمِنۡهُم مَّن كَفَرَۚ وَلَوۡ شَآءَ ٱللَّهُ مَا ٱقۡتَتَلُواْ وَلَٰكِنَّ ٱللَّهَ يَفۡعَلُ مَا يُرِيدُ ﴿٢٥٣﴾

254. ಓ ಸತ್ಯವಿಶ್ವಾಸಿಗಳೇ! ಯಾವುದೇ ವ್ಯವಹಾರ, ಗೆಳೆತನ ಅಥವಾ ಶಿಫಾರಸು ಇಲ್ಲದ ಒಂದು ದಿನ ಬರುವುದಕ್ಕೆ ಮೊದಲೇ ನಾವು ನಿಮಗೆ ಒದಗಿಸಿದ ಧನದಿಂದ ಖರ್ಚು ಮಾಡಿರಿ. ಸತ್ಯನಿಷೇಧಿಗಳೇ ಅಕ್ರಮಿಗಳು.

يَٰٓأَيُّهَا ٱلَّذِينَ ءَامَنُوٓاْ أَنفِقُواْ مِمَّا رَزَقۡنَٰكُم مِّن قَبۡلِ أَن يَأۡتِيَ يَوۡمٞ لَّا بَيۡعٞ فِيهِ وَلَا خُلَّةٞ وَلَا شَفَٰعَةٞۗ وَٱلۡكَٰفِرُونَ هُمُ ٱلظَّٰلِمُونَ ﴿٢٥٤﴾

255. ಅಲ್ಲಾಹು! ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ಅವನು ನಿರಂತರ ಜೀವಿಸುವವನು ಮತ್ತು ಎಲ್ಲರನ್ನೂ ಸಂರಕ್ಷಿಸಿ ನಿಯಂತ್ರಿಸುವವನಾಗಿದ್ದಾನೆ. ತೂಕಡಿಕೆ ಅಥವಾ ನಿದ್ದೆ ಅವನನ್ನು ವಶಪಡಿಸುವುದಿಲ್ಲ. ಭೂಮ್ಯಾಕಾಶಗಳಲ್ಲಿರುವ ಎಲ್ಲವೂ ಅವನಿಗೆ ಸೇರಿದ್ದು. ಅವನ ಅಪ್ಪಣೆಯಿಲ್ಲದೆ ಅವನ ಬಳಿ ಶಿಫಾರಸು ಮಾಡುವವನು ಯಾರು? ಅವರ ಮುಂದಿರುವುದನ್ನು ಮತ್ತು ಅವರ ಹಿಂದಿರುವುದನ್ನು ಅವನು ತಿಳಿಯುತ್ತಾನೆ. ಅವನ ಜ್ಞಾನದಿಂದ ಅವನು ಇಚ್ಛಿಸುವಷ್ಟನ್ನಲ್ಲದೆ (ಬೇರೇನನ್ನೂ) ತಿಳಿದುಕೊಳ್ಳಲು ಅವರಿಗೆ ಸಾಧ್ಯವಿಲ್ಲ. ಅವನ ಕುರ್ಸೀ ಭೂಮ್ಯಾ-ಕಾಶಗಳನ್ನು ವ್ಯಾಪಿಸಿಕೊಂಡಿದೆ. ಅವುಗಳ ಸಂರಕ್ಷಣೆಯು ಅವನನ್ನು ಆಯಾಸಗೊಳಿಸುವುದಿಲ್ಲ. ಅವನು ಅತ್ಯುನ್ನತನು ಮತ್ತು ಮಹಾನನಾಗಿದ್ದಾನೆ .[1]

ٱللَّهُ لَآ إِلَٰهَ إِلَّا هُوَ ٱلۡحَيُّ ٱلۡقَيُّومُۚ لَا تَأۡخُذُهُۥ سِنَةٞ وَلَا نَوۡمٞۚ لَّهُۥ مَا فِي ٱلسَّمَٰوَٰتِ وَمَا فِي ٱلۡأَرۡضِۗ مَن ذَا ٱلَّذِي يَشۡفَعُ عِندَهُۥٓ إِلَّا بِإِذۡنِهِۦۚ يَعۡلَمُ مَا بَيۡنَ أَيۡدِيهِمۡ وَمَا خَلۡفَهُمۡۖ وَلَا يُحِيطُونَ بِشَيۡءٖ مِّنۡ عِلۡمِهِۦٓ إِلَّا بِمَا شَآءَۚ وَسِعَ كُرۡسِيُّهُ ٱلسَّمَٰوَٰتِ وَٱلۡأَرۡضَۖ وَلَا يَـُٔودُهُۥ حِفۡظُهُمَاۚ وَهُوَ ٱلۡعَلِيُّ ٱلۡعَظِيمُ ﴿٢٥٥﴾

[1] ಇದು ಆಯತುಲ್ ಕುರ್ಸಿ ಆಗಿದ್ದು ಹದೀಸ್ ಗಳಲ್ಲಿ ಇದರ ಅನೇಕ ಶ್ರೇಷ್ಠತೆಗಳ ಬಗ್ಗೆ ಉಲ್ಲೇಖಗಳಿವೆ.

256. ಧರ್ಮದ ವಿಷಯದಲ್ಲಿ ಯಾವುದೇ ಬಲಾತ್ಕಾರವಿಲ್ಲ. ಸನ್ಮಾರ್ಗವು ದುರ್ಮಾರ್ಗದಿಂದ ಸ್ಪಷ್ಟವಾಗಿ ಬೇರ್ಪಟ್ಟಿದೆ. ಆದ್ದರಿಂದ ಯಾರು ಅಲ್ಲಾಹನ ಹೊರತಾದ ದೇವರುಗಳನ್ನು ನಿಷೇಧಿಸಿ ಅಲ್ಲಾಹನಲ್ಲಿ ಮಾತ್ರ ವಿಶ್ವಾಸವಿಡುತ್ತಾನೋ ಅವನು ಅತ್ಯಂತ ಬಲಿಷ್ಠ ಹಗ್ಗವನ್ನು ಹಿಡಿದುಕೊಂಡನು. ಅದು ಎಂದಿಗೂ ಕಡಿದು ಹೋಗುವುದಿಲ್ಲ. ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

لَآ إِكۡرَاهَ فِي ٱلدِّينِۖ قَد تَّبَيَّنَ ٱلرُّشۡدُ مِنَ ٱلۡغَيِّۚ فَمَن يَكۡفُرۡ بِٱلطَّٰغُوتِ وَيُؤۡمِنۢ بِٱللَّهِ فَقَدِ ٱسۡتَمۡسَكَ بِٱلۡعُرۡوَةِ ٱلۡوُثۡقَىٰ لَا ٱنفِصَامَ لَهَاۗ وَٱللَّهُ سَمِيعٌ عَلِيمٌ ٢٥٦

257. ಅಲ್ಲಾಹು ಸತ್ಯವಿಶ್ವಾಸಿಗಳ ರಕ್ಷಕನು. ಅವನು ಅವರನ್ನು ಅಂಧಕಾರಗಳಿಂದ ಬೆಳಕಿಗೆ ತರುತ್ತಾನೆ. ಅಲ್ಲಾಹನ ಹೊರತಾದ ದೇವರುಗಳು ಸತ್ಯನಿಷೇಧಿಗಳ ಸಂರಕ್ಷಕರಾಗಿದ್ದಾರೆ. ಅವರು ಅವರನ್ನು ಬೆಳಕಿನಿಂದ ಅಂಧಕಾರಗಳಿಗೆ ಸಾಗಿಸುತ್ತಾರೆ. ಅವರೇ ನರಕವಾಸಿಗಳು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು.

ٱللَّهُ وَلِيُّ ٱلَّذِينَ ءَامَنُواْ يُخۡرِجُهُم مِّنَ ٱلظُّلُمَٰتِ إِلَى ٱلنُّورِۖ وَٱلَّذِينَ كَفَرُوٓاْ أَوۡلِيَآؤُهُمُ ٱلطَّٰغُوتُ يُخۡرِجُونَهُم مِّنَ ٱلنُّورِ إِلَى ٱلظُّلُمَٰتِۗ أُوْلَٰٓئِكَ أَصۡحَٰبُ ٱلنَّارِۖ هُمۡ فِيهَا خَٰلِدُونَ ٢٥٧

258. ಇಬ್ರಾಹೀಮರೊಡನೆ ಅವರ ಪರಿಪಾಲಕನ (ಅಲ್ಲಾಹನ) ವಿಷಯದಲ್ಲಿ ತರ್ಕಿಸಿದವನನ್ನು ನೀವು ನೋಡಿಲ್ಲವೇ? ಅಲ್ಲಾಹು ಅವನಿಗೆ ಸಾಮ್ರಾಜ್ಯವನ್ನು ದಯಪಾಲಿಸಿದ್ದನು. "ನನ್ನ ಪರಿಪಾಲಕನು (ಅಲ್ಲಾಹು) ಜೀವ ಮತ್ತು ಮರಣವನ್ನು ನೀಡುತ್ತಾನೆ" ಎಂದು ಇಬ್ರಾಹೀಂ ಹೇಳಿದಾಗ, "ನಾನು ಕೂಡ ಜೀವ ಮತ್ತು ಮರಣವನ್ನು ನೀಡುತ್ತೇನೆ" ಎಂದು ಅವನು ಹೇಳಿದನು. ಇಬ್ರಾಹೀಂ ಹೇಳಿದರು: "ಅಲ್ಲಾಹು ಸೂರ್ಯನನ್ನು ಪೂರ್ವದಿಂದ ತರುತ್ತಾನೆ; ನೀವು ಅದನ್ನು ಪಶ್ಚಿಮದಿಂದ ತನ್ನಿರಿ!" ಆಗ ಆ ಸತ್ಯನಿಷೇಧಿ ಮೂಕವಿಸ್ಮಿತನಾದನು. ಅಕ್ರಮವೆಸಗುವ ಜನರಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ.

أَلَمۡ تَرَ إِلَى ٱلَّذِي حَآجَّ إِبۡرَٰهِـۧمَ فِي رَبِّهِۦٓ أَنۡ ءَاتَىٰهُ ٱللَّهُ ٱلۡمُلۡكَ إِذۡ قَالَ إِبۡرَٰهِـۧمُ رَبِّيَ ٱلَّذِي يُحۡيِۦ وَيُمِيتُ قَالَ أَنَا۠ أُحۡيِۦ وَأُمِيتُۖ قَالَ إِبۡرَٰهِـۧمُ فَإِنَّ ٱللَّهَ يَأۡتِي بِٱلشَّمۡسِ مِنَ ٱلۡمَشۡرِقِ فَأۡتِ بِهَا مِنَ ٱلۡمَغۡرِبِ فَبُهِتَ ٱلَّذِي كَفَرَۗ وَٱللَّهُ لَا يَهۡدِي ٱلۡقَوۡمَ ٱلظَّٰلِمِينَ ٢٥٨

259. ಅಥವಾ ಛಾವಣಿಗಳೊಂದಿಗೆ ಕುಸಿದುಬಿದ್ದ ಒಂದು ಊರಿನ ಬಳಿಯಿಂದ ಸಂಚರಿಸುತ್ತಿದ್ದ ಒಬ್ಬ ವ್ಯಕ್ತಿಯಂತೆ. ಅವರು ಕೇಳಿದರು: "ನಿರ್ಜೀವವಾದ ಬಳಿಕ ಅಲ್ಲಾಹು ಇದಕ್ಕೆ ಜೀವ ನೀಡುವುದು ಹೇಗೆ?" ಆಗ ಅಲ್ಲಾಹು ಅವರನ್ನು ನೂರು ವರ್ಷಗಳ ಕಾಲ ಮೃತ್ಯುವಶಗೊಳಿಸಿದನು. ನಂತರ ಅವರಿಗೆ ಜೀವ ನೀಡಿ ಎಬ್ಬಿಸಿ ಕೇಳಿದನು: "ನೀವು ಎಷ್ಟು ವರ್ಷ ಕಳೆದಿರಿ?" ಅವರು ಉತ್ತರಿಸಿದರು: "ಒಂದು ದಿನ ಅಥವಾ ದಿನದ ಕೆಲವು ತಾಸುಗಳು." ಅಲ್ಲಾಹು ಹೇಳಿದನು: "ಅಲ್ಲ, ವಾಸ್ತವವಾಗಿ ನೀವು ನೂರು ವರ್ಷ ಕಳೆದಿದ್ದೀರಿ. ನೀವು ನಿಮ್ಮ ಆಹಾರ-ಪಾನೀಯಗಳನ್ನು ನೋಡಿರಿ. ಅವು ಹಾಳಾಗಿಲ್ಲ. ನಿಮ್ಮ ಕತ್ತೆಯನ್ನು ನೋಡಿರಿ. ನಾವು ನಿಮ್ಮನ್ನು ಜನರಿಗೊಂದು ದೃಷ್ಟಾಂತವಾಗಿ ಮಾಡುತ್ತೇವೆ. ನಾವು ಆ ಮೂಳೆಗಳನ್ನು ಹೇಗೆ ಜೋಡಿಸುತ್ತೇವೆ

أَوۡ كَٱلَّذِي مَرَّ عَلَىٰ قَرۡيَةٖ وَهِيَ خَاوِيَةٌ عَلَىٰ عُرُوشِهَا قَالَ أَنَّىٰ يُحۡيِۦ هَٰذِهِ ٱللَّهُ بَعۡدَ مَوۡتِهَاۖ فَأَمَاتَهُ ٱللَّهُ مِاْئَةَ عَامٖ ثُمَّ بَعَثَهُۥۖ قَالَ كَمۡ لَبِثۡتَۖ قَالَ لَبِثۡتُ يَوۡمًا أَوۡ بَعۡضَ يَوۡمٖۖ قَالَ بَل لَّبِثۡتَ مِاْئَةَ عَامٖ فَٱنظُرۡ إِلَىٰ طَعَامِكَ وَشَرَابِكَ لَمۡ يَتَسَنَّهۡۖ وَٱنظُرۡ إِلَىٰ حِمَارِكَ وَلِنَجۡعَلَكَ ءَايَةٗ لِّلنَّاسِۖ وَٱنظُرۡ إِلَى ٱلۡعِظَامِ كَيۡفَ نُنشِزُهَا ثُمَّ نَكۡسُوهَا لَحۡمٗاۚ فَلَمَّا تَبَيَّنَ لَهُۥ قَالَ أَعۡلَمُ أَنَّ ٱللَّهَ عَلَىٰ كُلِّ شَيۡءٖ قَدِيرٞ ٢٥٩

ಮತ್ತು ಅವುಗಳಿಗೆ ಹೇಗೆ ಮಾಂಸವನ್ನು ಹೊದಿಯುತ್ತೇವೆಂದು ನೋಡಿರಿ." ಅವರಿಗೆ ವಿಷಯವು ಸ್ಪಷ್ಟವಾದಾಗ ಅವರು ಹೇಳಿದರು: "ನಿಶ್ಚಯವಾಗಿಯೂ ಅಲ್ಲಾಹನಿಗೆ ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವಿದೆಯೆಂದು ನನಗೆ ತಿಳಿದಿದೆ."

---

وَإِذۡ قَالَ إِبۡرَٰهِـۧمُ رَبِّ أَرِنِي كَيۡفَ تُحۡيِ ٱلۡمَوۡتَىٰۖ
قَالَ أَوَلَمۡ تُؤۡمِنۖ قَالَ بَلَىٰ وَلَٰكِن لِّيَطۡمَئِنَّ
قَلۡبِيۖ قَالَ فَخُذۡ أَرۡبَعَةٗ مِّنَ ٱلطَّيۡرِ فَصُرۡهُنَّ
إِلَيۡكَ ثُمَّ ٱجۡعَلۡ عَلَىٰ كُلِّ جَبَلٖ مِّنۡهُنَّ جُزۡءٗا ثُمَّ
ٱدۡعُهُنَّ يَأۡتِينَكَ سَعۡيٗاۚ وَٱعۡلَمۡ أَنَّ ٱللَّهَ عَزِيزٌ
حَكِيمٞ ٢٦٠

260. ಇಬ್ರಾಹೀಮ್ ಹೇಳಿದ ಸಂದರ್ಭ: "ಓ ನನ್ನ ಪರಿಪಾಲಕನೇ! ನೀನು ಸತ್ತವರಿಗೆ ಹೇಗೆ ಜೀವ ನೀಡುತ್ತೀ ಎಂದು ನನಗೆ ತೋರಿಸಿಕೊಡು." ಅಲ್ಲಾಹು ಕೇಳಿದನು: "ನಿಮಗೆ ನಂಬಿಕೆಯಿಲ್ಲವೇ?" ಅವರು ಹೇಳಿದರು: "ನಂಬಿಕೆಯಿದೆ. ಆದರೆ ನನ್ನ ಹೃದಯದ ಸಮಾಧಾನಕ್ಕಾಗಿ." ಅಲ್ಲಾಹು ಹೇಳಿದನು: "ನೀವು ನಾಲ್ಕು ಹಕ್ಕಿಗಳನ್ನು ಹಿಡಿದು ಅವುಗಳನ್ನು ನಿಮ್ಮ ಬಳಿಗೆ ಸೇರಿಸಿಕೊಳ್ಳಿ, ನಂತರ ಅವುಗಳನ್ನು (ತುಂಡುಗಳಾಗಿ ಕತ್ತರಿಸಿ) ಒಂದೊಂದು ಭಾಗವನ್ನು ಒಂದೊಂದು ಬೆಟ್ಟದ ಮೇಲಿಡಿ. ನಂತರ ಅವುಗಳನ್ನು ಕೂಗಿ ಕರೆಯಿರಿ. ಅವು ತಕ್ಷಣ ನಿಮ್ಮ ಬಳಿಗೆ ಓಡಿ ಬರುವುವು. ತಿಳಿಯಿರಿ! ನಿಶ್ಚಯವಾಗಿಯೂ ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

---

مَّثَلُ ٱلَّذِينَ يُنفِقُونَ أَمۡوَٰلَهُمۡ فِي سَبِيلِ ٱللَّهِ
كَمَثَلِ حَبَّةٍ أَنۢبَتَتۡ سَبۡعَ سَنَابِلَ فِي كُلِّ سُنۢبُلَةٖ
مِّاْئَةُ حَبَّةٖۗ وَٱللَّهُ يُضَٰعِفُ لِمَن يَشَآءُۚ وَٱللَّهُ
وَٰسِعٌ عَلِيمٌ ٢٦١

261. ಅಲ್ಲಾಹನ ಮಾರ್ಗದಲ್ಲಿ ತಮ್ಮ ಧನವನ್ನು ಖರ್ಚು ಮಾಡುವವರ ಉದಾಹರಣೆಯು ಒಂದು ಧಾನ್ಯದಂತೆ. ಅದು ಏಳು ತೆನೆಗಳನ್ನು ಉತ್ಪಾದಿಸಿತು. ಪ್ರತಿಯೊಂದು ತೆನೆಯಲ್ಲೂ ನೂರು ಧಾನ್ಯಗಳಿವೆ. ಅಲ್ಲಾಹು ಅವನು ಇಚ್ಛಿಸುವವರಿಗೆ ಇಮ್ಮಡಿಗೊಳಿಸಿಕೊಡುತ್ತಾನೆ. ಅಲ್ಲಾಹು ವಿಶಾಲನು ಮತ್ತು ಸರ್ವಜ್ಞನಾಗಿದ್ದಾನೆ.

---

ٱلَّذِينَ يُنفِقُونَ أَمۡوَٰلَهُمۡ فِي سَبِيلِ ٱللَّهِ ثُمَّ لَا
يُتۡبِعُونَ مَآ أَنفَقُواْ مَنّٗا وَلَآ أَذٗى لَّهُمۡ أَجۡرُهُمۡ
عِندَ رَبِّهِمۡ وَلَا خَوۡفٌ عَلَيۡهِمۡ وَلَا هُمۡ
يَحۡزَنُونَ ٢٦٢

262. ಅಲ್ಲಾಹನ ಮಾರ್ಗದಲ್ಲಿ ತಮ್ಮ ಧನವನ್ನು ಖರ್ಚು ಮಾಡುವವರು ಮತ್ತು ನಂತರ ತಾವು ಖರ್ಚು ಮಾಡಿದ್ದಕ್ಕಾಗಿ ಉಪಕಾರ ಸ್ಮರಣೆ ಬಯಸದವರು ಮತ್ತು ತೊಂದರೆ ಕೊಡದವರು ಯಾರೋ—ಅವರಿಗೆ ಅವರ ಪರಿಪಾಲಕನ (ಅಲ್ಲಾಹನ) ಬಳಿ ಅವರ ಪ್ರತಿಫಲವಿದೆ. ಅವರಿಗೆ ಯಾವುದೇ ಭಯವಿಲ್ಲ; ಅವರು ದುಃಖಿಸುವುದೂ ಇಲ್ಲ.

---

۞قَوۡلٞ مَّعۡرُوفٞ وَمَغۡفِرَةٌ خَيۡرٞ مِّن صَدَقَةٖ يَتۡبَعُهَآ
أَذٗىۗ وَٱللَّهُ غَنِيٌّ حَلِيمٞ ٢٦٣

263. ಕೊಟ್ಟ ನಂತರ ತೊಂದರೆ ನೀಡುವ ದಾನಕ್ಕಿಂತ ಉತ್ತಮವಾದ ಮಾತು ಮತ್ತು ಕ್ಷಮೆಯು ಶ್ರೇಷ್ಠವಾಗಿದೆ. ಅಲ್ಲಾಹು ನಿರಪೇಕ್ಷನು ಮತ್ತು ಸಹಿಷ್ಣುತೆಯುಳ್ಳವನಾಗಿದ್ದಾನೆ.

---

يَٰٓأَيُّهَا ٱلَّذِينَ ءَامَنُواْ لَا تُبۡطِلُواْ صَدَقَٰتِكُم
بِٱلۡمَنِّ وَٱلۡأَذَىٰ كَٱلَّذِي يُنفِقُ مَالَهُۥ رِئَآءَ
ٱلنَّاسِ وَلَا يُؤۡمِنُ بِٱللَّهِ وَٱلۡيَوۡمِ ٱلۡأٓخِرِۖ فَمَثَلُهُۥ

264. ಓ ಸತ್ಯವಿಶ್ವಾಸಿಗಳೇ! ಉಪಕಾರ ಸ್ಮರಣೆ ಬಯಸುವ ಮೂಲಕ ಮತ್ತು ತೊಂದರೆ ಕೊಡುವ ಮೂಲಕ ನಿಮ್ಮ ದಾನಗಳನ್ನು ವ್ಯರ್ಥಗೊಳಿಸಬೇಡಿ. ಅಲ್ಲಾಹನಲ್ಲಿ ಮತ್ತು ಪರಲೋಕದಲ್ಲಿ

كَمَثَلِ صَفْوَانٍ عَلَيْهِ تُرَابٌ فَأَصَابَهُۥ وَابِلٌ فَتَرَكَهُۥ صَلْدًاۖ لَّا يَقْدِرُونَ عَلَىٰ شَيْءٍ مِّمَّا كَسَبُواْۗ وَٱللَّهُ لَا يَهْدِى ٱلْقَوْمَ ٱلْكَٰفِرِينَ ٢٦٤

ವಿಶ್ವಾಸವಿಡದೆ ಕೇವಲ ಜನರು ನೋಡುವುದಕ್ಕಾಗಿ ಖರ್ಚು ಮಾಡುವ ವ್ಯಕ್ತಿಯಂತೆ ನೀವಾಗಬೇಡಿ. ಅವನ ಉದಾಹರಣೆಯು ನುಣುಪಾದ ಒಂದು ಬಂಡೆಯಂತೆ. ಅದರ ಮೇಲೆ ಸ್ವಲ್ಪ ಮಣ್ಣಿದೆ. ಅದಕ್ಕೆ ಜಡಿಮಳೆ ಸುರಿದು ಅದು ಅದನ್ನು ಬೋಳು ಮಾಡಿಬಿಟ್ಟಿತು. ಅವರಿಗೆ ಅವರು ಸಂಪಾದಿಸಿದ ಯಾವುದನ್ನೂ ವಶದಲ್ಲಿಟ್ಟುಕೊಳ್ಳಲು ಸಾಧ್ಯವಾಗುವುದಿಲ್ಲ. ಸತ್ಯನಿಷೇಧಿಗಳಾದ ಜನರಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ.

---

وَمَثَلُ ٱلَّذِينَ يُنفِقُونَ أَمْوَٰلَهُمُ ٱبْتِغَآءَ مَرْضَاتِ ٱللَّهِ وَتَثْبِيتًا مِّنْ أَنفُسِهِمْ كَمَثَلِ جَنَّةٍۭ بِرَبْوَةٍ أَصَابَهَا وَابِلٌ فَـَٔاتَتْ أُكُلَهَا ضِعْفَيْنِ فَإِن لَّمْ يُصِبْهَا وَابِلٌ فَطَلٌّۗ وَٱللَّهُ بِمَا تَعْمَلُونَ بَصِيرٌ ٢٦٥

265. ಅಲ್ಲಾಹನ ಸಂಪ್ರೀತಿಯನ್ನು ಹುಡುಕುತ್ತಾ ದೃಢಮನಸ್ಸಿನಿಂದ ಮತ್ತು ಮನಸ್ಸಂತೃಪ್ತಿಯಿಂದ ತಮ್ಮ ಧನವನ್ನು ಖರ್ಚು ಮಾಡುವವರ ಉದಾಹರಣೆಯು ಎತ್ತರದ ಸ್ಥಳದಲ್ಲಿರುವ ಒಂದು ತೋಟದಂತೆ. ಅದಕ್ಕೆ ಜಡಿಮಳೆಯು ಸುರಿದಾಗ ಅದು ಇಮ್ಮಡಿ ಫಲವನ್ನು ನೀಡುತ್ತದೆ. ಅದಕ್ಕೆ ಜಡಿಮಳೆ ಸುರಿಯದಿದ್ದರೂ ತುಂತುರು ಮಳೆ ಸಾಕಾಗುತ್ತದೆ. ಅಲ್ಲಾಹು ನೀವು ಮಾಡುತ್ತಿರುವ ಕರ್ಮಗಳನ್ನು ನೋಡುತ್ತಿದ್ದಾನೆ.

---

أَيَوَدُّ أَحَدُكُمْ أَن تَكُونَ لَهُۥ جَنَّةٌ مِّن نَّخِيلٍ وَأَعْنَابٍ تَجْرِى مِن تَحْتِهَا ٱلْأَنْهَٰرُ لَهُۥ فِيهَا مِن كُلِّ ٱلثَّمَرَٰتِ وَأَصَابَهُ ٱلْكِبَرُ وَلَهُۥ ذُرِّيَّةٌ ضُعَفَآءُ فَأَصَابَهَآ إِعْصَارٌ فِيهِ نَارٌ فَٱحْتَرَقَتْۗ كَذَٰلِكَ يُبَيِّنُ ٱللَّهُ لَكُمُ ٱلْـَٔايَٰتِ لَعَلَّكُمْ تَتَفَكَّرُونَ ٢٦٦

266. ನಿಮ್ಮಲ್ಲೊಬ್ಬನಿಗೆ ತಳಭಾಗದಿಂದ ನದಿಗಳು ಹರಿಯುವ, ಖರ್ಜೂರ ಮತ್ತು ದ್ರಾಕ್ಷಿಯ ಹಾಗೂ ಎಲ್ಲಾ ರೀತಿಯ ಹಣ್ಣು-ಹಂಪಲುಗಳಿರುವ ಒಂದು ತೋಟವಿದ್ದು, ಅವನು ವೃದ್ಧನಾಗಿದ್ದು ಬಲಹೀನರಾದ ಮಕ್ಕಳೂ ಇರುವ ಸ್ಥಿತಿಯಲ್ಲಿ ಆ ತೋಟಕ್ಕೆ ಬೆಂಕಿಯ ಬಿರುಗಾಳಿ ಬೀಸಿ ಅದರಿಂದ ಆ ತೋಟವು ಸುಟ್ಟು ಕರಕಲಾಗುವುದನ್ನು ನೀವು ಬಯಸುತ್ತೀರಾ? ಈ ರೀತಿ ಅಲ್ಲಾಹು ತನ್ನ ವಚನಗಳನ್ನು ನಿಮಗೆ ಸ್ಪಷ್ಟವಾಗಿ ವಿವರಿಸಿಕೊಡು-ತ್ತಾನೆ. ನೀವು ಆಲೋಚಿಸುವುದಕ್ಕಾಗಿ.

---

يَٰٓأَيُّهَا ٱلَّذِينَ ءَامَنُوٓاْ أَنفِقُواْ مِن طَيِّبَٰتِ مَا كَسَبْتُمْ وَمِمَّآ أَخْرَجْنَا لَكُم مِّنَ ٱلْأَرْضِۖ وَلَا تَيَمَّمُواْ ٱلْخَبِيثَ مِنْهُ تُنفِقُونَ وَلَسْتُم بِـَٔاخِذِيهِ إِلَّآ أَن تُغْمِضُواْ فِيهِۚ وَٱعْلَمُوٓاْ أَنَّ ٱللَّهَ غَنِىٌّ حَمِيدٌ ٢٦٧

267. ಓ ಸತ್ಯವಿಶ್ವಾಸಿಗಳೇ! ನೀವು ಸಂಪಾದಿಸಿದ ಉತ್ತಮ ವಸ್ತುಗಳಿಂದ ಮತ್ತು ನಾವು ನಿಮಗೆ ಭೂಮಿಯಿಂದ ಉತ್ಪಾದಿಸಿಕೊಟ್ಟ ವಸ್ತುಗಳಿಂದ ಖರ್ಚು (ದಾನ) ಮಾಡಿರಿ. ನೀವು ಕಣ್ಣು ಮುಚ್ಚಿಕೊಂಡಲ್ಲದೆ ಸ್ವೀಕರಿಸದ ಕೆಟ್ಟ ವಸ್ತುಗಳನ್ನು ಖರ್ಚು (ದಾನ) ಮಾಡಲು ಮುಂದಾಗಬೇಡಿ. ತಿಳಿಯಿರಿ! ನಿಶ್ಚಯವಾಗಿಯೂ ಅಲ್ಲಾಹು ನಿರಪೇಕ್ಷನು ಮತ್ತು ಸ್ತುತ್ಯರ್ಹನಾಗಿದ್ದಾನೆ.

---

ٱلشَّيْطَٰنُ يَعِدُكُمُ ٱلْفَقْرَ وَيَأْمُرُكُم بِٱلْفَحْشَآءِۖ وَٱللَّهُ يَعِدُكُم مَّغْفِرَةً مِّنْهُ وَفَضْلًاۗ وَٱللَّهُ وَٰسِعٌ عَلِيمٌ ٢٦٨

268. ಶೈತಾನನು ನಿಮಗೆ ಬಡತನದ ಬಗ್ಗೆ ಬೆದರಿಸುತ್ತಾನೆ ಮತ್ತು ಅಶ್ಲೀಲತೆಯನ್ನು ಆದೇಶಿಸುತ್ತಾನೆ. ಅಲ್ಲಾಹು ನಿಮಗೆ ಅವನ ಕ್ಷಮೆ ಮತ್ತು ಔದಾರ್ಯದ ಬಗ್ಗೆ ವಾಗ್ದಾನ ಮಾಡುತ್ತಾನೆ. ಅಲ್ಲಾಹು ವಿಶಾಲನು ಮತ್ತು ಸರ್ವಜ್ಞನಾಗಿದ್ದಾನೆ.

**269.** ಅವನು ಇಚ್ಛಿಸುವವರಿಗೆ ಅವನು ವಿವೇಕವನ್ನು ದಯಪಾಲಿಸುತ್ತಾನೆ. ಯಾರಿಗೆ ವಿವೇಕವನ್ನು ದಯಪಾ-ಲಿಸಲಾಗಿದೆಯೋ ಅವನಿಗೆ ಅತ್ಯಧಿಕ ಒಳಿತುಗಳನ್ನು ದಯಪಾಲಿಸಲಾಗಿದೆ. ಬುದ್ಧಿವಂತರ ಹೊರತು ಇನ್ನಾರೂ ಉಪದೇಶವನ್ನು ಸ್ವೀಕರಿಸುವುದಿಲ್ಲ.

يُؤۡتِي ٱلۡحِكۡمَةَ مَن يَشَآءُۚ وَمَن يُؤۡتَ ٱلۡحِكۡمَةَ فَقَدۡ أُوتِيَ خَيۡرٗا كَثِيرٗاۗ وَمَا يَذَّكَّرُ إِلَّآ أُوْلُواْ ٱلۡأَلۡبَٰبِ ٢٦٩

---

**270.** ನೀವು ಯಾವುದೇ ವಸ್ತುವನ್ನು ಖರ್ಚು (ದಾನ) ಮಾಡಿದರೂ ಅಥವಾ ಹರಕೆ ಮಾಡಿದರೂ ನಿಶ್ಚಯವಾಗಿಯೂ ಅಲ್ಲಾಹು ಅದನ್ನು ತಿಳಿಯುತ್ತಾನೆ. ಅಕ್ರಮಿಗಳಿಗೆ ಸಹಾಯ ಮಾಡುವವರು ಯಾರೂ ಇಲ್ಲ.

وَمَآ أَنفَقۡتُم مِّن نَّفَقَةٍ أَوۡ نَذَرۡتُم مِّن نَّذۡرٖ فَإِنَّ ٱللَّهَ يَعۡلَمُهُۥۗ وَمَا لِلظَّٰلِمِينَ مِنۡ أَنصَارٍ ٢٧٠

---

**271.** ನೀವು ದಾನ ಮಾಡಿದ್ದನ್ನು ಬಹಿರಂಗಪಡಿಸಿದರೆ ಅದು ಒಳ್ಳೆಯದೇ. ಆದರೆ ನೀವು ಅದನ್ನು ಗೋಪ್ಯವಾಗಿಟ್ಟು ಬಡವರಿಗೆ ನೀಡಿದರೆ ಅದು ನಿಮಗೆ ಶ್ರೇಷ್ಠವಾಗಿದೆ. ಅಲ್ಲಾಹು ನಿಮ್ಮ ಪಾಪಗಳನ್ನು ಅಳಿಸುವನು. ನೀವು ಮಾಡುವ ಕರ್ಮಗಳ ಬಗ್ಗೆ ಅಲ್ಲಾಹು ಸೂಕ್ಷ್ಮವಾಗಿ ತಿಳಿದಿದ್ದಾನೆ.

إِن تُبۡدُواْ ٱلصَّدَقَٰتِ فَنِعِمَّا هِيَۖ وَإِن تُخۡفُوهَا وَتُؤۡتُوهَا ٱلۡفُقَرَآءَ فَهُوَ خَيۡرٞ لَّكُمۡۚ وَيُكَفِّرُ عَنكُم مِّن سَيِّـَٔاتِكُمۡۗ وَٱللَّهُ بِمَا تَعۡمَلُونَ خَبِيرٞ ٢٧١

---

**272.** ನಿಮಗೆ ಅವರನ್ನು ಸನ್ಮಾರ್ಗದಲ್ಲಿ ಸೇರಿಸುವ ಹೊಣೆಗಾರಿಕೆಯಿಲ್ಲ. ಬದಲಿಗೆ, ಅಲ್ಲಾಹು ಅವನು ಇಚ್ಛಿಸುವವರನ್ನು ಸನ್ಮಾರ್ಗದಲ್ಲಿ ಸೇರಿಸುತ್ತಾನೆ. ನೀವು ಏನು ಖರ್ಚು (ದಾನ) ಮಾಡಿದರೂ ಅದರ ಲಾಭವು ನಿಮಗೇ ಆಗಿದೆ. ಅಲ್ಲಾಹನ ಸಂಪ್ರೀತಿಯನ್ನು ಬಯಸಿಯೇ ವಿನಾ ನೀವು ಖರ್ಚು (ದಾನ) ಮಾಡಬಾರದು. ನೀವು ಏನು ಖರ್ಚು (ದಾನ) ಮಾಡಿದರೂ ಅದರ ಪೂರ್ಣ ಪ್ರತಿಫಲವನ್ನು ನಿಮಗೆ ನೀಡಲಾಗುವುದು. ನಿಮಗೆ ಸ್ವಲ್ಪವೂ ಅನ್ಯಾಯವಾಗುವುದಿಲ್ಲ.

لَّيۡسَ عَلَيۡكَ هُدَىٰهُمۡ وَلَٰكِنَّ ٱللَّهَ يَهۡدِي مَن يَشَآءُۗ وَمَا تُنفِقُواْ مِنۡ خَيۡرٖ فَلِأَنفُسِكُمۡۚ وَمَا تُنفِقُونَ إِلَّا ٱبۡتِغَآءَ وَجۡهِ ٱللَّهِۚ وَمَا تُنفِقُواْ مِنۡ خَيۡرٖ يُوَفَّ إِلَيۡكُمۡ وَأَنتُمۡ لَا تُظۡلَمُونَ ٢٧٢

---

**273.** ಭೂಮಿಯಲ್ಲಿ ಓಡಾಡಲು ಸಾಧ್ಯವಾಗದಂತೆ ಅಲ್ಲಾಹನ ಮಾರ್ಗದಲ್ಲಿ ಬಂಧನದಲ್ಲಿರುವ ಬಡವರಿಗೆ (ಖರ್ಚು ಮಾಡಿರಿ).[1] ಅವರಿಗೆ ಆತ್ಮಸಂಯಮವಿರುವ ಕಾರಣ (ಇತರರ ಮುಂದೆ ಕೈ ಚಾಚಿ ಬೇಡದ ಕಾರಣ) ಅವಿವೇಕಿಗಳು ಅವರನ್ನು ಶ್ರೀಮಂತರೆಂದು ಭಾವಿಸುತ್ತಾರೆ. ನಿಮಗೆ ಅವರನ್ನು ಅವರ ಹಾವಭಾವಗಳಿಂದ ಗುರುತಿಸಬಹುದು. ಅವರು ಜನರೊಡನೆ ಕಾಡಿ ಬೇಡುವುದಿಲ್ಲ. ನೀವು (ಅಲ್ಲಾಹನ ಮಾರ್ಗದಲ್ಲಿ) ಯಾವುದೇ ಸಂಪತ್ತನ್ನು ಖರ್ಚು (ದಾನ) ಮಾಡಿದರೂ

لِلۡفُقَرَآءِ ٱلَّذِينَ أُحۡصِرُواْ فِي سَبِيلِ ٱللَّهِ لَا يَسۡتَطِيعُونَ ضَرۡبٗا فِي ٱلۡأَرۡضِ يَحۡسَبُهُمُ ٱلۡجَاهِلُ أَغۡنِيَآءَ مِنَ ٱلتَّعَفُّفِ تَعۡرِفُهُم بِسِيمَٰهُمۡ لَا يَسۡـَٔلُونَ ٱلنَّاسَ إِلۡحَافٗاۗ وَمَا تُنفِقُواْ مِنۡ خَيۡرٖ فَإِنَّ ٱللَّهَ بِهِۦ عَلِيمٌ ٢٧٣

---

[1] ಇಲ್ಲಿ ಉದ್ದೇಶಿಸಿರುವುದು ಮಕ್ಕಾದಿಂದ ಮದೀನಕ್ಕೆ ವಲಸೆ ಬಂದ ಮುಹಾಜಿರ್‌ಗಳನ್ನಾಗಿದೆ. ಅವರು ಅಲ್ಲಾಹನ ಮಾರ್ಗದಲ್ಲಿ ಎಲ್ಲವನ್ನೂ ತ್ಯಜಿಸಿ ಬಂದಿದ್ದರು.

ನಿಶ್ಚಯವಾಗಿಯೂ ಅಲ್ಲಾಹು ಅದನ್ನು ತಿಳಿಯುತ್ತಾನೆ.

---

**274.** ರಾತ್ರಿ ಮತ್ತು ಹಗಲು ರಹಸ್ಯವಾಗಿ ಮತ್ತು ಬಹಿರಂಗವಾಗಿ ತಮ್ಮ ಧನವನ್ನು ಖರ್ಚು ಮಾಡುವವರು ಯಾರೋ—ಅವರಿಗೆ ಅವರ ಪರಿಪಾಲಕನ (ಅಲ್ಲಾಹನ) ಬಳಿ ಅವರ ಪ್ರತಿಫಲವಿದೆ. ಅವರಿಗೆ ಯಾವುದೇ ಭಯವಿಲ್ಲ; ಅವರು ದುಃಖಿಸುವುದೂ ಇಲ್ಲ.

ٱلَّذِينَ يُنفِقُونَ أَمْوَٰلَهُم بِٱلَّيْلِ وَٱلنَّهَارِ سِرًّا
وَعَلَانِيَةً فَلَهُمْ أَجْرُهُمْ عِندَ رَبِّهِمْ وَلَا خَوْفٌ
عَلَيْهِمْ وَلَا هُمْ يَحْزَنُونَ ﴿٢٧٤﴾

---

**275.** ಬಡ್ಡಿ ತಿನ್ನುವವರು ಯಾರೋ ಅವರು ಶೈತಾನನ ಸ್ಪರ್ಶದಿಂದ ಹುಚ್ಚು ಹಿಡಿದವನು ಎದ್ದೇಳುವಂತೆಯೇ ವಿನಾ ಎದ್ದೇಳುವುದಿಲ್ಲ. ನಿಶ್ಚಯವಾಗಿಯೂ ವ್ಯಾಪಾರವು ಬಡ್ಡಿಯಂತೆ ಎಂದು ಅವರು ಹೇಳಿದ್ದೇ ಅದಕ್ಕೆ ಕಾರಣ. ಆದರೆ ಅಲ್ಲಾಹು ವ್ಯಾಪಾರವನ್ನು ಅನುಮತಿಸಿದ್ದಾನೆ ಮತ್ತು ಬಡ್ಡಿಯನ್ನು ನಿಷೇಧಿಸಿದ್ದಾನೆ. ಆದ್ದರಿಂದ, ಯಾರು ಅಲ್ಲಾಹನ ಕಡೆಯಿಂದ ಬಂದ ಉಪದೇಶವನ್ನು ಕೇಳಿದ ನಂತರ ಬಡ್ಡಿ ವ್ಯವಹಾರವನ್ನು ನಿಲ್ಲಿಸುತ್ತಾನೋ ಅವನಿಗೆ ಹಿಂದೆ ಪಡೆದುದರಲ್ಲಿ ದೋಷವಿಲ್ಲ; ಅವನ ವಿಚಾರಣೆಯು ಅಲ್ಲಾಹನಿಗೆ ಬಿಟ್ಟದ್ದು. ಆದರೆ ಯಾರು ಪುನಃ ಬಡ್ಡಿ ವ್ಯವಹಾರಕ್ಕೆ ಮರಳುತ್ತಾರೋ ಅವರೇ ನರಕವಾಸಿಗಳು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು.

ٱلَّذِينَ يَأْكُلُونَ ٱلرِّبَوٰاْ لَا يَقُومُونَ إِلَّا كَمَا
يَقُومُ ٱلَّذِى يَتَخَبَّطُهُ ٱلشَّيْطَٰنُ مِنَ ٱلْمَسِّ ۚ
ذَٰلِكَ بِأَنَّهُمْ قَالُوٓاْ إِنَّمَا ٱلْبَيْعُ مِثْلُ ٱلرِّبَوٰاْ ۗ وَأَحَلَّ
ٱللَّهُ ٱلْبَيْعَ وَحَرَّمَ ٱلرِّبَوٰاْ ۚ فَمَن جَآءَهُۥ مَوْعِظَةٌ
مِّن رَّبِّهِۦ فَٱنتَهَىٰ فَلَهُۥ مَا سَلَفَ وَأَمْرُهُۥٓ إِلَى
ٱللَّهِ ۖ وَمَنْ عَادَ فَأُوْلَٰٓئِكَ أَصْحَٰبُ ٱلنَّارِ ۖ هُمْ
فِيهَا خَٰلِدُونَ ﴿٢٧٥﴾

---

**276.** ಅಲ್ಲಾಹು ಬಡ್ಡಿಯನ್ನು ಅಳಿಸುತ್ತಾನೆ ಮತ್ತು ದಾನ ಧರ್ಮಗಳನ್ನು ಪೋಷಿಸುತ್ತಾನೆ. ಕೃತಘ್ನ ಮತ್ತು ಪಾಪಿಯಾದ ಯಾರನ್ನೂ ಅಲ್ಲಾಹು ಇಷ್ಟಪಡುವುದಿಲ್ಲ.

يَمْحَقُ ٱللَّهُ ٱلرِّبَوٰاْ وَيُرْبِى ٱلصَّدَقَٰتِ ۗ وَٱللَّهُ لَا
يُحِبُّ كُلَّ كَفَّارٍ أَثِيمٍ ﴿٢٧٦﴾

---

**277.** ನಿಶ್ಚಯವಾಗಿಯೂ ಸತ್ಯವಿಶ್ವಾಸಿಗಳು, ಸತ್ಕರ್ಮವೆಸಗುವವರು, ನಮಾಝ್ ಸಂಸ್ಥಾಪಿಸುವವರು ಮತ್ತು ಝಕಾತ್ ನೀಡುವವರು ಯಾರೋ—ಅವರಿಗೆ ಅವರ ಪರಿಪಾಲಕನ (ಅಲ್ಲಾಹನ) ಬಳಿ ಅವರ ಪ್ರತಿಫಲವಿದೆ. ಅವರಿಗೆ ಯಾವುದೇ ಭಯವಿಲ್ಲ; ಅವರು ದುಃಖಿಸುವುದೂ ಇಲ್ಲ.

إِنَّ ٱلَّذِينَ ءَامَنُواْ وَعَمِلُواْ ٱلصَّٰلِحَٰتِ وَأَقَامُواْ
ٱلصَّلَوٰةَ وَءَاتَوُاْ ٱلزَّكَوٰةَ لَهُمْ أَجْرُهُمْ عِندَ رَبِّهِمْ
وَلَا خَوْفٌ عَلَيْهِمْ وَلَا هُمْ يَحْزَنُونَ ﴿٢٧٧﴾

---

**278.** ಓ ಸತ್ಯವಿಶ್ವಾಸಿಗಳೇ! ಅಲ್ಲಾಹನನ್ನು ಭಯಪಡಿರಿ ಮತ್ತು ಬಡ್ಡಿಯಲ್ಲಿ ಬರಲು ಬಾಕಿಯಿರುವುದನ್ನು ಬಿಟ್ಟುಬಿಡಿ. ನೀವು ಸತ್ಯವಿಶ್ವಾಸಿಗಳಾಗಿದ್ದರೆ.

يَٰٓأَيُّهَا ٱلَّذِينَ ءَامَنُواْ ٱتَّقُواْ ٱللَّهَ وَذَرُواْ مَا بَقِىَ
مِنَ ٱلرِّبَوٰٓاْ إِن كُنتُم مُّؤْمِنِينَ ﴿٢٧٨﴾

---

**279.** ನೀವು ಅದನ್ನು ಮಾಡದಿದ್ದರೆ, ಅಲ್ಲಾಹನೊಡನೆ ಮತ್ತು ಅವನ ಸಂದೇಶವಾಹಕರೊಡನೆ ಹೋರಾಡಲು ಸಿದ್ಧರಾಗಿರಿ. ನೀವು ಪಶ್ಚಾತ್ತಾಪಪಟ್ಟರೆ ನಿಮ್ಮ ಬಂಡವಾಳವನ್ನು ನೀವಿ-ಟ್ಟುಕೊಳ್ಳಬಹುದು. ನೀವು ಅನ್ಯಾಯ ಮಾಡಬಾರದು

فَإِن لَّمْ تَفْعَلُواْ فَأْذَنُواْ بِحَرْبٍ مِّنَ ٱللَّهِ وَرَسُولِهِۦ ۖ
وَإِن تُبْتُمْ فَلَكُمْ رُءُوسُ أَمْوَٰلِكُمْ لَا
تَظْلِمُونَ وَلَا تُظْلَمُونَ ﴿٢٧٩﴾

ಮತ್ತು ನಿಮಗೂ ಅನ್ಯಾಯವಾಗಬಾರದು.

---

280. (ಸಾಲ ಪಡೆದವನು) ಕಷ್ಟದಲ್ಲಿದ್ದರೆ (ಅವನಿಗೆ) ನಿರಾಳತೆ ದೊರಕುವ ತನಕ ಕಾಲಾವಕಾಶ ನೀಡಿ. ನೀವು ಅದನ್ನು ದಾನವಾಗಿ ಬಿಟ್ಟುಬಿಟ್ಟರೆ ಅದು ನಿಮಗೆ ಅತ್ಯುತ್ತಮವಾಗಿದೆ. ನೀವು ತಿಳಿದವರಾಗಿದ್ದರೆ.

وَإِن كَانَ ذُو عُسۡرَةٖ فَنَظِرَةٌ إِلَىٰ مَيۡسَرَةٖۚ وَأَن
تَصَدَّقُواْ خَيۡرٞ لَّكُمۡ إِن كُنتُمۡ تَعۡلَمُونَ ٢٨٠

---

281. ನಿಮ್ಮನ್ನು ಅಲ್ಲಾಹನ ಬಳಿಗೆ ಮರಳಿಸಲಾಗುವ ಒಂದು ದಿನವನ್ನು ಭಯಪಡಿರಿ. ನಂತರ ಪ್ರತಿಯೊಬ್ಬರಿಗೂ ಅವರು ಮಾಡಿದ ಕರ್ಮಗಳ ಪ್ರತಿಫಲವನ್ನು ಪೂರ್ಣವಾಗಿ ನೀಡಲಾಗುವುದು. ಅವರಿಗೆ ಯಾವುದೇ ಅನ್ಯಾಯವಾಗುವುದಿಲ್ಲ.

وَٱتَّقُواْ يَوۡمٗا تُرۡجَعُونَ فِيهِ إِلَى ٱللَّهِۖ ثُمَّ تُوَفَّىٰ كُلُّ
نَفۡسٖ مَّا كَسَبَتۡ وَهُمۡ لَا يُظۡلَمُونَ ٢٨١

---

282. ಓ ಸತ್ಯವಿಶ್ವಾಸಿಗಳೇ! ನೀವು ಪರಸ್ಪರ ಅವಧಿಯನ್ನು ನಿಶ್ಚಯಿಸಿ ಸಾಲ ವ್ಯವಹಾರ ಮಾಡುವುದಾದರೆ ಅದನ್ನು ಬರೆದಿಟ್ಟುಕೊಳ್ಳಿ, ನಿಮ್ಮ ನಡುವೆ ಒಬ್ಬ ಬರಹಗಾರನು ನ್ಯಾಯಯುತವಾಗಿ ಬರೆಯಲಿ. ಅಲ್ಲಾಹು ಕಲಿಸಿಕೊಟ್ಟ ರೀತಿಯಲ್ಲಿ ಬರೆಯಲು ಬರಹಗಾರನು ನಿರಾಕರಿಸಬಾರದು. ಆದ್ದರಿಂದ ಅವನು ಬರೆಯಲಿ ಮತ್ತು ಸಾಲದ ಹೊಣೆ ಹೊತ್ತವನು ಏನು ಬರೆಯಬೇಕೆಂದು ಹೇಳಿಕೊಡಲಿ. ಅವನು ತನ್ನ ಪರಿಪಾಲಕನಾದ ಅಲ್ಲಾಹನನ್ನು ಭಯಪಡಲಿ ಮತ್ತು ಹೊಣೆಯಿಂದ ಏನೂ ಕಡಿಮೆಗೊಳಿಸದಿರಲಿ. ಸಾಲದ ಹೊಣೆ ಹೊತ್ತವನು ಅವಿವೇಕಿಯಾಗಿದ್ದರೆ, ಅಥವಾ ಬಲಹೀನನಾಗಿದ್ದರೆ, ಅಥವಾ ಹೇಳಿಕೊಡಲು ಅಸಮರ್ಥನಾಗಿದ್ದರೆ ಅವನ ಪೋಷಕರು ನ್ಯಾಯಯುತವಾಗಿ ಹೇಳಿಕೊಡಲಿ. ನಿಮ್ಮ ಪೈಕಿ ಇಬ್ಬರು ಪುರುಷರನ್ನು ಸಾಕ್ಷಿ ನಿಲ್ಲಿಸಿರಿ. ಇಬ್ಬರು ಪುರುಷರಿಲ್ಲದಿದ್ದರೆ ಸಾಕ್ಷಿ ನಿಲ್ಲುವವರ ಪೈಕಿ ನಿಮಗೆ ತೃಪ್ತಿಯಾಗುವ ಒಬ್ಬ ಪುರುಷ ಮತ್ತು ಇಬ್ಬರು ಮಹಿಳೆಯರು ಸಾಕ್ಷಿ ನಿಲ್ಲಲಿ. ಅವರಲ್ಲಿ ಒಬ್ಬಳು ಮರೆತುಬಿಟ್ಟರೆ ಇನ್ನೊಬ್ಬಳು ನೆನಪಿಸುವುದಕ್ಕಾಗಿ. ಸಾಕ್ಷಿಗಳನ್ನು ಕರೆದಾಗ ಅವರು ಬರಲು ಅಸಮ್ಮತಿ ಸೂಚಿಸಬಾರದು. ಸಾಲವನ್ನು ಅದು ಚಿಕ್ಕದಾಗಿರಲಿ ಅಥವಾ ದೊಡ್ಡದಾಗಿರಲಿ ಅದರ ನಿಶ್ಚಿತ ಅವಧಿಗೆ ಬರೆಯಲು ಆಲಸ್ಯ ಮಾಡಬೇಡಿ. ಇದು ಅಲ್ಲಾಹನ ಬಳಿ ಅತ್ಯಂತ ನ್ಯಾಯಸಮ್ಮತವಾಗಿದೆ, ಸಾಕ್ಷಿಯನ್ನು ಹೆಚ್ಚು ಸರಿಯಾಗಿಡುತ್ತದೆ ಮತ್ತು ನೀವು ಸಂಶಯಪಡದಂತೆ ಮಾಡುತ್ತದೆ. ಆದರೆ ಅದು ನೀವು ಪರಸ್ಪರ ನಡೆಸುವ ನಗದು ವ್ಯಾಪಾರದ ರೂಪದಲ್ಲಿದ್ದರೆ ಅದನ್ನು ಬರೆಯದಿದ್ದರೆ ನಿಮಗೆ ದೋಷವಿಲ್ಲ. ಆದರೆ ನೀವು ಕ್ರಯ-ವಿಕ್ರಯ ಮಾಡುವಾಗ ಸಾಕ್ಷಿಗಳನ್ನು ನಿಲ್ಲಿಸಿರಿ. ಬರಹಗಾರನಿಗೆ

يَٰٓأَيُّهَا ٱلَّذِينَ ءَامَنُوٓاْ إِذَا تَدَايَنتُم بِدَيۡنٍ إِلَىٰٓ
أَجَلٖ مُّسَمّٗى فَٱكۡتُبُوهُۚ وَلۡيَكۡتُب بَّيۡنَكُمۡ
كَاتِبُۢ بِٱلۡعَدۡلِۚ وَلَا يَأۡبَ كَاتِبٌ أَن يَكۡتُبَ
كَمَا عَلَّمَهُ ٱللَّهُۚ فَلۡيَكۡتُبۡ وَلۡيُمۡلِلِ ٱلَّذِي عَلَيۡهِ
ٱلۡحَقُّ وَلۡيَتَّقِ ٱللَّهَ رَبَّهُۥ وَلَا يَبۡخَسۡ مِنۡهُ شَيۡـٔٗاۚ
فَإِن كَانَ ٱلَّذِي عَلَيۡهِ ٱلۡحَقُّ سَفِيهًا أَوۡ ضَعِيفًا
أَوۡ لَا يَسۡتَطِيعُ أَن يُمِلَّ هُوَ فَلۡيُمۡلِلۡ وَلِيُّهُۥ
بِٱلۡعَدۡلِۚ وَٱسۡتَشۡهِدُواْ شَهِيدَيۡنِ مِن رِّجَالِكُمۡۖ
فَإِن لَّمۡ يَكُونَا رَجُلَيۡنِ فَرَجُلٞ وَٱمۡرَأَتَانِ مِمَّن
تَرۡضَوۡنَ مِنَ ٱلشُّهَدَآءِ أَن تَضِلَّ إِحۡدَىٰهُمَا
فَتُذَكِّرَ إِحۡدَىٰهُمَا ٱلۡأُخۡرَىٰۚ وَلَا يَأۡبَ ٱلشُّهَدَآءُ
إِذَا مَا دُعُواْۚ وَلَا تَسۡـَٔمُوٓاْ أَن تَكۡتُبُوهُ صَغِيرًا
أَوۡ كَبِيرًا إِلَىٰٓ أَجَلِهِۦۚ ذَٰلِكُمۡ أَقۡسَطُ عِندَ
ٱللَّهِ وَأَقۡوَمُ لِلشَّهَٰدَةِ وَأَدۡنَىٰٓ أَلَّا تَرۡتَابُوٓاْ إِلَّآ أَن
تَكُونَ تِجَٰرَةً حَاضِرَةٗ تُدِيرُونَهَا بَيۡنَكُمۡ
فَلَيۡسَ عَلَيۡكُمۡ جُنَاحٌ أَلَّا تَكۡتُبُوهَاۗ
وَأَشۡهِدُوٓاْ إِذَا تَبَايَعۡتُمۡۚ وَلَا يُضَآرَّ كَاتِبٞ
وَلَا شَهِيدٞۚ وَإِن تَفۡعَلُواْ فَإِنَّهُۥ فُسُوقُۢ بِكُمۡۗ
وَٱتَّقُواْ ٱللَّهَۖ وَيُعَلِّمُكُمُ ٱللَّهُۗ وَٱللَّهُ بِكُلِّ شَيۡءٍ
عَلِيمٞ ٢٨٢

ಅಥವಾ ಸಾಕ್ಷಿಗೆ ತೊಂದರೆಯಾಗದಂತೆ ನೋಡಿಕೊಳ್ಳಿ, ನೀವೇನಾದರೂ ತೊಂದರೆಯಾಗುವಂತೆ ಮಾಡಿದರೆ ಅದು ನಿಮ್ಮ ದುಷ್ಕರ್ಮವೆಂದು ಪರಿಗಣಿಸಲಾಗುವುದು. ಅಲ್ಲಾಹನನ್ನು ಭಯಪಡಿರಿ. ಅಲ್ಲಾಹು ನಿಮಗೆ ಕಲಿಸಿಕೊಡುತ್ತಿದ್ದಾನೆ. ಅಲ್ಲಾಹು ಎಲ್ಲಾ ವಿಷಯಗಳನ್ನೂ ತಿಳಿದವನಾಗಿದ್ದಾನೆ.

---

283. ನೀವು ಪ್ರಯಾಣದಲ್ಲಿದ್ದು ನಿಮಗೆ ಬರಹಗಾರನು ಸಿಗದಿದ್ದರೆ, ಅಡಮಾನವನ್ನು ಸ್ವಾಧೀನದಲ್ಲಿರಿಸಿಕೊಳ್ಳಿರಿ. ನೀವು ಪರಸ್ಪರ ವಿಶ್ವಾಸವನ್ನು ಹೊಂದಿದ್ದರೆ ವಿಶ್ವಾಸವಿಡಲಾದವನು (ಸಾಲ ಪಡೆದವನು) ತನ್ನ ವಿಶ್ವಸ್ತತೆಯನ್ನು ನೆರವೇರಿಸಲಿ ಮತ್ತು ತನ್ನ ಪರಿಪಾಲಕನಾದ ಅಲ್ಲಾಹನನ್ನು ಭಯಪಡಲಿ.[1] ನೀವು ಸಾಕ್ಷ್ಯವನ್ನು ಬಚ್ಚಿಡಬೇಡಿ. ಯಾರು ಅದನ್ನು ಬಚ್ಚಿಡುತ್ತಾನೋ ಅವನು ಪಾಪಭರಿತ ಹೃದಯದವನಾಗಿದ್ದಾನೆ. ಅಲ್ಲಾಹು ನೀವು ಮಾಡುತ್ತಿರುವ ಕರ್ಮಗಳನ್ನು ನೋಡುತ್ತಿದ್ದಾನೆ.

وَإِن كُنتُمۡ عَلَىٰ سَفَرٖ وَلَمۡ تَجِدُواْ كَاتِبٗا فَرِهَٰنٞ مَّقۡبُوضَةٞۖ فَإِنۡ أَمِنَ بَعۡضُكُم بَعۡضٗا فَلۡيُؤَدِّ ٱلَّذِي ٱؤۡتُمِنَ أَمَٰنَتَهُۥ وَلۡيَتَّقِ ٱللَّهَ رَبَّهُۥۗ وَلَا تَكۡتُمُواْ ٱلشَّهَٰدَةَۚ وَمَن يَكۡتُمۡهَا فَإِنَّهُۥٓ ءَاثِمٞ قَلۡبُهُۥۗ وَٱللَّهُ بِمَا تَعۡمَلُونَ عَلِيمٞ ٢٨٣

---

284. ಭೂಮ್ಯಾಕಾಶಗಳಲ್ಲಿರುವುದೆಲ್ಲವೂ ಅಲ್ಲಾಹನಿಗೆ ಸೇರಿದ್ದು. ನೀವು ನಿಮ್ಮ ಮನಸ್ಸಿನಲ್ಲಿರುವುದನ್ನು ಬಹಿರಂಗಪಡಿಸಿದರೂ ಅಥವಾ ಮುಚ್ಚಿಟ್ಟರೂ ಅಲ್ಲಾಹು ಅದರ ಬಗ್ಗೆ ನಿಮ್ಮನ್ನು ವಿಚಾರಣೆ ಮಾಡುವನು. ನಂತರ ಅವನು ಇಚ್ಛಿಸಿದವರಿಗೆ ಅವನು ಕ್ಷಮಿಸುವನು ಮತ್ತು ಅವನು ಇಚ್ಛಿಸಿದವರನ್ನು ಶಿಕ್ಷಿಸುವನು. ಅಲ್ಲಾಹು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

لِّلَّهِ مَا فِي ٱلسَّمَٰوَٰتِ وَمَا فِي ٱلۡأَرۡضِۗ وَإِن تُبۡدُواْ مَا فِيٓ أَنفُسِكُمۡ أَوۡ تُخۡفُوهُ يُحَاسِبۡكُم بِهِ ٱللَّهُۖ فَيَغۡفِرُ لِمَن يَشَآءُ وَيُعَذِّبُ مَن يَشَآءُۗ وَٱللَّهُ عَلَىٰ كُلِّ شَيۡءٖ قَدِيرٌ ٢٨٤

---

285. ತಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಅವತೀರ್ಣವಾದ ಸಂದೇಶದಲ್ಲಿ ಸಂದೇಶವಾಹಕರು ವಿಶ್ವಾಸವಿಟ್ಟಿದ್ದಾರೆ; ಸತ್ಯವಿ-ಶ್ವಾಸಿಗಳು ಕೂಡ ವಿಶ್ವಾಸವಿಟ್ಟಿದ್ದಾರೆ. ಅವರೆಲ್ಲರೂ ಅಲ್ಲಾಹನಲ್ಲಿ, ಅವನ ದೇವದೂತರುಗಳಲ್ಲಿ, ಅವನ ಗ್ರಂಥಗಳಲ್ಲಿ ಮತ್ತು ಅವನ ಸಂದೇಶವಾಹಕರುಗಳಲ್ಲಿ ವಿಶ್ವಾಸವಿಟ್ಟಿದ್ದಾರೆ. ಅವನ ಸಂದೇಶವಾಹಕರುಗಳಲ್ಲಿ ಯಾರ ನಡುವೆಯೂ ನಾವು ಬೇಧ ಮಾಡುವುದಿಲ್ಲ. ಅವರು ಹೇಳುತ್ತಾರೆ: "ನಾವು ಕೇಳಿದ್ದೇವೆ ಮತ್ತು ವಿಧೇಯರಾಗಿದ್ದೇವೆ. ಓ ನಮ್ಮ ಪರಿಪಾಲಕನೇ! ನಮ್ಮನ್ನು ಕ್ಷಮಿಸು. ನಮಗೆ ನಿನ್ನ ಬಳಿಗೇ ಮರಳಬೇಕಾಗಿದೆ."

ءَامَنَ ٱلرَّسُولُ بِمَآ أُنزِلَ إِلَيۡهِ مِن رَّبِّهِۦ وَٱلۡمُؤۡمِنُونَۚ كُلٌّ ءَامَنَ بِٱللَّهِ وَمَلَٰٓئِكَتِهِۦ وَكُتُبِهِۦ وَرُسُلِهِۦ لَا نُفَرِّقُ بَيۡنَ أَحَدٖ مِّن رُّسُلِهِۦۚ وَقَالُواْ سَمِعۡنَا وَأَطَعۡنَاۖ غُفۡرَانَكَ رَبَّنَا وَإِلَيۡكَ ٱلۡمَصِيرُ ٢٨٥

---

286. ಅಲ್ಲಾಹು ಯಾವುದೇ ವ್ಯಕ್ತಿಯ ಮೇಲೂ ಅವನ ಸಾಮರ್ಥ್ಯಕ್ಕೆ

---

[1] ಪ್ರಯಾಣದ ಸಮಯದಲ್ಲಿ ಸಾಲ ವ್ಯವಹಾರ ಮಾಡಬೇಕಾಗಿ ಬಂದರೆ ಮತ್ತು ಅಲ್ಲಿ ಬರಹಗಾರನು ಅಥವಾ ಬರೆಯುವ ಸಾಧನಗಳು (ಕಾಗದ, ಲೇಖನಿ ಇತ್ಯಾದಿ) ಸಿಗದಿದ್ದರೆ ಸಾಲ ಪಡೆಯುವವನು ಏನಾದರೂ ವಸ್ತುವನ್ನು ಅಡವಿಟ್ಟು ಸಾಲ ಪಡೆಯಬೇಕು. ಆದರೆ ಸಾಲ ನೀಡುವವನು ಮತ್ತು ಪಡೆಯುವವನು ಪರಸ್ಪರ ವಿಶ್ವಾಸವನ್ನು ಹೊಂದಿದ್ದರೆ ಅಡಮಾನವಿಲ್ಲದೆಯೇ ಸಾಲ ನೀಡಬಹುದು. ಆದರೆ ಸಾಲ ಪಡೆದವನು ತನ್ನ ವಿಶ್ವಸ್ತತೆಯನ್ನು ಕಾಪಾಡಿಕೊಂಡು ಸಾಲವನ್ನು ಸೂಕ್ತ ಸಮಯದಲ್ಲಿ ಹಿಂದಿರುಗಿಸಬೇಕು.

ಮೀರಿದ್ದನ್ನು ಹೊರಿಸುವುದಿಲ್ಲ. ಅವನು ಮಾಡಿದ ಒಳಿತು ಅವನಿಗೆ ಮತ್ತು ಅವನು ಮಾಡಿದ ಕೆಡುಕು ಅವನಿಗೆ. “ಓ ನಮ್ಮ ಪರಿಪಾಲಕನೇ! ನಾವು ಮರೆತುಬಿಟ್ಟರೆ ಅಥವಾ ತಪ್ಪು ಮಾಡಿದರೆ ನಮ್ಮನ್ನು ಹಿಡಿದು ಶಿಕ್ಷಿಸಬೇಡ. ಓ ನಮ್ಮ ಪರಿಪಾಲಕನೇ! ನಮಗಿಂತ ಮೊದಲಿನವರ ಮೇಲೆ ನೀನು ಹೊರಿಸಿದಂತಹ ಹೊರೆಯನ್ನು ನಮ್ಮ ಮೇಲೆ ಹೊರಿಸಬೇಡ. ಓ ನಮ್ಮ ಪರಿಪಾಲಕನೇ! ನಮಗೆ ಹೊರಲು ಸಾಮರ್ಥ್ಯವಿಲ್ಲದ್ದನ್ನು ನಮ್ಮ ಮೇಲೆ ಹೊರಿಸಬೇಡ. ನಮ್ಮನ್ನು ಮನ್ನಿಸು, ನಮ್ಮನ್ನು ಕ್ಷಮಿಸು ಮತ್ತು ನಮಗೆ ದಯೆ ತೋರು. ನೀನೇ ನಮ್ಮ ಸಂರಕ್ಷಕ. ಸತ್ಯನಿಷೇಧಿಗಳಾದ ಜನರ ಮೇಲೆ ನಮಗೆ ಜಯವನ್ನು ದಯಪಾಲಿಸು.”

لَا يُكَلِّفُ ٱللَّهُ نَفْسًا إِلَّا وُسْعَهَا ۚ لَهَا مَا كَسَبَتْ
وَعَلَيْهَا مَا ٱكْتَسَبَتْ ۗ رَبَّنَا لَا تُؤَاخِذْنَآ
إِن نَّسِينَآ أَوْ أَخْطَأْنَا ۚ رَبَّنَا وَلَا تَحْمِلْ عَلَيْنَآ
إِصْرًا كَمَا حَمَلْتَهُۥ عَلَى ٱلَّذِينَ مِن قَبْلِنَا ۚ رَبَّنَا
وَلَا تُحَمِّلْنَا مَا لَا طَاقَةَ لَنَا بِهِۦ ۖ وَٱعْفُ عَنَّا
وَٱغْفِرْ لَنَا وَٱرْحَمْنَآ ۚ أَنتَ مَوْلَىٰنَا فَٱنصُرْنَا عَلَى
ٱلْقَوْمِ ٱلْكَٰفِرِينَ ﴿٢٨٦﴾

# 3. ಆಲು ಇಮ್ರಾನ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسْمِ ٱللَّهِ ٱلرَّحْمَٰنِ ٱلرَّحِيمِ

1. ಅಲಿಫ್ ಲಾಮ್ ಮೀಮ್.

الٓمٓ ﴿١﴾

2. ಅಲ್ಲಾಹು! ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ಅವನು ನಿರಂತರ ಜೀವಿಸುವವನು ಮತ್ತು ಎಲ್ಲವನ್ನೂ ಸಂರಕ್ಷಿಸಿ ನಿಯಂತ್ರಿಸುವವನಾಗಿದ್ದಾನೆ.

ٱللَّهُ لَآ إِلَٰهَ إِلَّا هُوَ ٱلْحَىُّ ٱلْقَيُّومُ ﴿٢﴾

3. ಅವನು ನಿಮಗೆ ಈ ಗ್ರಂಥವನ್ನು ಸತ್ಯದೊಂದಿಗೆ ಅವತೀರ್ಣಗೊಳಿಸಿದ್ದಾನೆ. ಇದು ಹಿಂದಿನ ಗ್ರಂಥಗಳನ್ನು ದೃಢೀಕರಿಸುತ್ತದೆ. ಅವನು ತೌರಾತ್ ಮತ್ತು ಇಂಜೀಲನ್ನು ಕೂಡ ಅವತೀರ್ಣಗೊಳಿಸಿದ್ದನು.

نَزَّلَ عَلَيْكَ ٱلْكِتَٰبَ بِٱلْحَقِّ مُصَدِّقًا لِّمَا بَيْنَ
يَدَيْهِ وَأَنزَلَ ٱلتَّوْرَىٰةَ وَٱلْإِنجِيلَ ﴿٣﴾

4. ಇದಕ್ಕಿಂತ ಮೊದಲು ಜನರಿಗೆ ಸನ್ಮಾರ್ಗದರ್ಶಿಯಾಗಿ. ಅವನು (ಸತ್ಯಾಸತ್ಯವನ್ನು ಬೇರ್ಪಡಿಸಿ ತೋರಿಸುವ) ಕುರ್‌ಆನನ್ನು ಕೂಡ ಅವತೀರ್ಣಗೊಳಿಸಿದ್ದಾನೆ. ನಿಶ್ಚಯವಾಗಿಯೂ ಅಲ್ಲಾಹನ ವಚನಗಳನ್ನು ನಿಷೇಧಿಸುವವರು ಯಾರೋ—ಅವರಿಗೆ ಕಠಿಣ ಶಿಕ್ಷೆಯಿದೆ. ಅಲ್ಲಾಹು ಪ್ರಬಲನು ಮತ್ತು ಪ್ರತೀಕಾರ ಪಡೆಯುವವನಾಗಿದ್ದಾನೆ.

مِن قَبْلُ هُدًى لِّلنَّاسِ وَأَنزَلَ ٱلْفُرْقَانَ ۗ إِنَّ
ٱلَّذِينَ كَفَرُوا۟ بِـَٔايَٰتِ ٱللَّهِ لَهُمْ عَذَابٌ شَدِيدٌ ۗ
وَٱللَّهُ عَزِيزٌ ذُو ٱنتِقَامٍ ﴿٤﴾

5. ನಿಶ್ಚಯವಾಗಿಯೂ ಭೂಮ್ಯಾಕಾಶಗಳಲ್ಲಿರುವ ಯಾವುದೇ ವಸ್ತು

إِنَّ ٱللَّهَ لَا يَخْفَىٰ عَلَيْهِ شَىْءٌ فِى ٱلْأَرْضِ وَلَا فِى

ಅಲ್ಲಾಹನಿಂದ ಮರೆಯಾಗಿಲ್ಲ.

ٱلسَّمَآءِ ۝٥

---

6. ತಾಯಿಯ ಗರ್ಭದಲ್ಲಿ ಅವನು ಇಚ್ಛಿಸುವ ರೀತಿಯಲ್ಲಿ ನಿಮಗೆ ರೂಪ ಕೊಡುವವನು ಅವನೇ. ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ಅವನು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

هُوَ ٱلَّذِى يُصَوِّرُكُمْ فِى ٱلْأَرْحَامِ كَيْفَ يَشَآءُ ۚ لَآ
إِلَٰهَ إِلَّا هُوَ ٱلْعَزِيزُ ٱلْحَكِيمُ ۝٦

---

7. ನಿಮಗೆ ಗ್ರಂಥವನ್ನು ಅವತೀರ್ಣಗೊಳಿಸಿದ್ದು ಅವನೇ. ಅದರಲ್ಲಿ ಸ್ಪಷ್ಟ ವಚನಗಳಿವೆ.[1] ಅವು ಗ್ರಂಥದ ಮೂಲಗಳಾಗಿವೆ. (ಅದರಲ್ಲಿ) ಹೋಲಿಕೆಯಿರುವ ಕೆಲವು ವಚನಗಳೂ ಇವೆ. ಹೃದಯದಲ್ಲಿ ವಕ್ರ-ತೆಯಿರುವವರು, ಗೊಂದಲವನ್ನು ಸೃಷ್ಟಿಸಲು ಮತ್ತು ತಪ್ಪಾಗಿ ವ್ಯಾಖ್ಯಾನಿಸಲು ಹೋಲಿಕೆಯಿರುವ ವಚನಗಳ ಹಿಂದೆ ಬೀಳುತ್ತಾರೆ. ಆದರೆ, ಅಲ್ಲಾಹನ ಹೊರತು ಯಾರೂ ಅದರ ವ್ಯಾಖ್ಯಾನವನ್ನು ತಿಳಿದಿಲ್ಲ. ಜ್ಞಾನದಲ್ಲಿ ಸದೃಢರಾಗಿರುವವರು ಹೇಳುತ್ತಾರೆ: "ನಾವು ಅದರಲ್ಲಿ ವಿಶ್ವಾಸವಿಟ್ಟಿದ್ದೇವೆ. ಎಲ್ಲವೂ ನಮ್ಮ ಪರಿಪಾಲಕನ (ಅಲ್ಲಾಹನ) ಕಡೆಯಿಂದಾಗಿದೆ." ಬುದ್ಧಿವಂತರ ಹೊರತು ಇನ್ನಾರೂ ಉಪದೇಶವನ್ನು ಪಡೆಯುವುದಿಲ್ಲ.

هُوَ ٱلَّذِىٓ أَنزَلَ عَلَيْكَ ٱلْكِتَٰبَ مِنْهُ ءَايَٰتٌ
مُّحْكَمَٰتٌ هُنَّ أُمُّ ٱلْكِتَٰبِ وَأُخَرُ مُتَشَٰبِهَٰتٌ ۖ
فَأَمَّا ٱلَّذِينَ فِى قُلُوبِهِمْ زَيْغٌ فَيَتَّبِعُونَ مَا تَشَٰبَهَ
مِنْهُ ٱبْتِغَآءَ ٱلْفِتْنَةِ وَٱبْتِغَآءَ تَأْوِيلِهِۦ ۗ وَمَا يَعْلَمُ
تَأْوِيلَهُۥٓ إِلَّا ٱللَّهُ ۗ وَٱلرَّٰسِخُونَ فِى ٱلْعِلْمِ يَقُولُونَ
ءَامَنَّا بِهِۦ كُلٌّ مِّنْ عِندِ رَبِّنَا ۗ وَمَا يَذَّكَّرُ إِلَّآ
أُو۟لُوا۟ ٱلْأَلْبَٰبِ ۝٧

---

8. "ಓ ನಮ್ಮ ಪರಿಪಾಲಕನೇ! ನಮ್ಮನ್ನು ಸನ್ಮಾರ್ಗಕ್ಕೆ ಸೇರಿಸಿದ ಬಳಿಕ ನಮ್ಮ ಹೃದಯಗಳನ್ನು ವಕ್ರಗೊಳಿಸಬೇಡ. ನಮಗೆ ನಿನ್ನ ಕಡೆಯಿಂದ ದಯೆಯನ್ನು ಸುರಿಸು. ನಿಶ್ಚಯವಾಗಿಯೂ ನೀನು ಅತಿದೊಡ್ಡ ಉದಾರಿಯಾಗಿರುವೆ.

رَبَّنَا لَا تُزِغْ قُلُوبَنَا بَعْدَ إِذْ هَدَيْتَنَا وَهَبْ لَنَا
مِن لَّدُنكَ رَحْمَةً ۚ إِنَّكَ أَنتَ ٱلْوَهَّابُ ۝٨

---

9. ಓ ನಮ್ಮ ಪರಿಪಾಲಕನೇ! ನಿಶ್ಚಯವಾಗಿಯೂ ಒಂದು ದಿನ ನೀನು ಎಲ್ಲಾ ಜನರನ್ನೂ ಒಟ್ಟುಗೂಡಿಸುವೆ. ಆ ದಿನ ಬರುವುದರಲ್ಲಿ ಸಂಶಯವೇ ಇಲ್ಲ. ನಿಶ್ಚಯವಾಗಿಯೂ ಅಲ್ಲಾಹು ವಾಗ್ದಾನವನ್ನು ಉಲ್ಲಂಘಿಸುವುದಿಲ್ಲ."

رَبَّنَآ إِنَّكَ جَامِعُ ٱلنَّاسِ لِيَوْمٍ لَّا رَيْبَ فِيهِ ۚ إِنَّ
ٱللَّهَ لَا يُخْلِفُ ٱلْمِيعَادَ ۝٩

---

10. ಸತ್ಯನಿಷೇಧಿಗಳು ಯಾರೋ—ಅವರಿಗೆ ಅವರ ಆಸ್ತಿಗಳು ಅಥವಾ ಮಕ್ಕಳು ಅಲ್ಲಾಹನ ಬಳಿ ಯಾವುದೇ ಉಪಕಾರ ಮಾಡುವುದಿಲ್ಲ. ಅವರೇ ನರಕಾಗ್ನಿಯ ಇಂಧನವಾಗುವವರು.

إِنَّ ٱلَّذِينَ كَفَرُوا۟ لَن تُغْنِىَ عَنْهُمْ أَمْوَٰلُهُمْ
وَلَآ أَوْلَٰدُهُم مِّنَ ٱللَّهِ شَيْـًٔا ۖ وَأُو۟لَٰٓئِكَ هُمْ وَقُودُ
ٱلنَّارِ ۝١٠

---

11. ಫರೋಹನ ಜನರ ಮತ್ತು ಅವರಿಗಿಂತ ಹಿಂದಿನವರ ಸ್ಥಿತಿಯಂತೆ. ಅವರು ನಮ್ಮ ವಚನಗಳನ್ನು ನಿಷೇಧಿಸಿದರು. ಆಗ ಅಲ್ಲಾಹು

كَدَأْبِ ءَالِ فِرْعَوْنَ وَٱلَّذِينَ مِن قَبْلِهِمْ ۚ كَذَّبُوا۟
بِـَٔايَٰتِنَا فَأَخَذَهُمُ ٱللَّهُ بِذُنُوبِهِمْ ۗ وَٱللَّهُ شَدِيدُ

---

[1] ಸ್ಪಷ್ಟವಚನಗಳು ಅಂದರೆ ಆದೇಶ-ವಿರೋಧಗಳು, ನಿಯಮಗಳು, ಸಮಸ್ಯೆಗಳಿಗೆ ಪರಿಹಾರಗಳು, ಸಮಾಚಾರಗಳು ಮತ್ತು ನಿರೂಪಣೆಗ-ಳಿರುವ ವಚನಗಳು. ಇವುಗಳನ್ನು ಅರ್ಥಮಾಡಿಕೊಳ್ಳಲು ಕಷ್ಟವಿಲ್ಲ. ಹೋಲಿಕೆಯಿರುವ ವಚನಗಳು ಇವುಗಳಿಗೆ ತದ್ವಿರುದ್ಧವಾದದ್ದು. ಅವು ಅಲ್ಲಾಹನ ಅಸ್ತಿತ್ವ, ವಿಧಿ-ನಿರ್ಣಯ, ಸ್ವರ್ಗ-ನರಕ, ದೇವದೂತರು ಮುಂತಾದವುಗಳಿಗೆ ಸಂಬಂಧಿಸಿದ ವಿವರಣೆಗಳಿರುವ ವಚನಗಳು.

ٱلۡعِقَابِ ١١

ಅವರ ಪಾಪಗಳ ನಿಮಿತ್ತ ಅವರನ್ನು ಶಿಕ್ಷಿಸಿದನು. ಅಲ್ಲಾಹು ಅತಿಕಠಿಣವಾಗಿ ಶಿಕ್ಷಿಸುವವನಾಗಿದ್ದಾನೆ.

---

قُل لِّلَّذِينَ كَفَرُواْ سَتُغۡلَبُونَ وَتُحۡشَرُونَ إِلَىٰ
جَهَنَّمَۖ وَبِئۡسَ ٱلۡمِهَادُ ١٢

12. ಸತ್ಯನಿಷೇಧಿಗಳೊಡನೆ ಹೇಳಿರಿ: "ಸದ್ಯದಲ್ಲೇ ನಿಮ್ಮನ್ನು ಸೋಲಿಸಲಾಗುವುದು ಮತ್ತು ನರಕದ ಕಡೆಗೆ ಒಟ್ಟುಗೂಡಿಸಲಾಗುವುದು. ಆ ವಾಸಸ್ಥಳವು ಬಹಳ ನಿಕೃಷ್ಟವಾಗಿದೆ."[1]

---

قَدۡ كَانَ لَكُمۡ ءَايَةٞ فِي فِئَتَيۡنِ ٱلۡتَقَتَاۖ فِئَةٞ
تُقَٰتِلُ فِي سَبِيلِ ٱللَّهِ وَأُخۡرَىٰ كَافِرَةٞ يَرَوۡنَهُم
مِّثۡلَيۡهِمۡ رَأۡيَ ٱلۡعَيۡنِۚ وَٱللَّهُ يُؤَيِّدُ بِنَصۡرِهِۦ مَن
يَشَآءُۚ إِنَّ فِي ذَٰلِكَ لَعِبۡرَةٗ لِّأُوْلِي ٱلۡأَبۡصَٰرِ ١٣

13. (ಬದ್ರ್‌ನಲ್ಲಿ) ಮುಖಾಮುಖಿಯಾದ ಆ ಎರಡು ಬಣಗಳಲ್ಲಿ ನಿಶ್ಚಯವಾಗಿಯೂ ನಿಮಗೆ ದೃಷ್ಟಾಂತವಿದೆ. ಒಂದು ಬಣವು ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡುತ್ತಿತ್ತು. ಇನ್ನೊಂದು ಬಣವು ಸತ್ಯನಿಷೇಧಿಗಳದ್ದಾಗಿತ್ತು. ಅವರು ತಮ್ಮ ದೃಷ್ಟಿಯಲ್ಲಿ ಸತ್ಯವಿಶ್ವಾಸಿಗಳನ್ನು ತಮಗಿಂತ ಇಮ್ಮಡಿ ಸಂಖ್ಯೆಯಲ್ಲಿ ಕಾಣುತ್ತಿದ್ದರು. ಅಲ್ಲಾಹು ತನ್ನ ಸಹಾಯದಿಂದ ತಾನು ಇಚ್ಛಿಸುವವರನ್ನು ಬೆಂಬಲಿಸುತ್ತಾನೆ. ನಿಶ್ಚಯವಾಗಿಯೂ ಅದರಲ್ಲಿ ದೃಷ್ಟಿಯುಳ್ಳವರಿಗೆ ನೀತಿಪಾಠವಿದೆ.

---

زُيِّنَ لِلنَّاسِ حُبُّ ٱلشَّهَوَٰتِ مِنَ ٱلنِّسَآءِ
وَٱلۡبَنِينَ وَٱلۡقَنَٰطِيرِ ٱلۡمُقَنطَرَةِ مِنَ ٱلذَّهَبِ
وَٱلۡفِضَّةِ وَٱلۡخَيۡلِ ٱلۡمُسَوَّمَةِ وَٱلۡأَنۡعَٰمِ وَٱلۡحَرۡثِۗ
ذَٰلِكَ مَتَٰعُ ٱلۡحَيَوٰةِ ٱلدُّنۡيَاۖ وَٱللَّهُ عِندَهُۥ حُسۡنُ
ٱلۡمَـَٔابِ ١٤

14. ಮಹಿಳೆಯರು, ಗಂಡುಮಕ್ಕಳು, ಬಂಗಾರ ಮತ್ತು ಬೆಳ್ಳಿಯನ್ನು ಸಂಗ್ರಹಿಸಿಡಲಾದ ಖಜಾನೆಗಳು, ಉತ್ಕೃಷ್ಟ ತಳಿಯ ಕುದುರೆಗಳು, ಜಾನುವಾರುಗಳು, ಕೃಷಿಗಳು ಮುಂತಾದ ಜನರು ಮೋಹಿಸುವ ವಸ್ತುಗಳಲ್ಲಿರುವ ಪ್ರೀತಿಯನ್ನು ಅವರಿಗೆ ಅಲಂಕರಿಸಿಕೊಡಲಾಗಿದೆ. ಅವು ಇಹಲೋಕ ಜೀವನದ ಆನಂದಗಳಾಗಿವೆ. ಮರಳಿ ತಲುಪಬೇಕಾದ ಅತ್ಯುತ್ತಮ ಸ್ಥಳವು ಅಲ್ಲಾಹನ ಬಳಿಯಿದೆ.

---

قُلۡ أَؤُنَبِّئُكُم بِخَيۡرٖ مِّن ذَٰلِكُمۡۖ لِلَّذِينَ ٱتَّقَوۡاْ
عِندَ رَبِّهِمۡ جَنَّٰتٞ تَجۡرِي مِن تَحۡتِهَا ٱلۡأَنۡهَٰرُ
خَٰلِدِينَ فِيهَا وَأَزۡوَٰجٞ مُّطَهَّرَةٞ وَرِضۡوَٰنٞ مِّنَ ٱللَّهِۗ
وَٱللَّهُ بَصِيرُۢ بِٱلۡعِبَادِ ١٥

15. ಹೇಳಿರಿ: "ಅದಕ್ಕಿಂತಲೂ ಉತ್ತಮವಾದ ವಸ್ತುವನ್ನು ನಾನು ನಿಮಗೆ ತಿಳಿಸಿಕೊಡಲೇ? ದೇವಭಯವುಳ್ಳವರಿಗೆ ಅವರ ಪರಿಪಾಲಕನ (ಅಲ್ಲಾಹನ) ಬಳಿ ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳಿವೆ. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅವರಿಗೆ ಪರಿಶುದ್ಧ ಸಂಗಾತಿಗಳಿದ್ದಾರೆ ಮತ್ತು ಅಲ್ಲಾಹನ ಕಡೆಯ ಸಂಪ್ರೀತಿಯೂ ಇದೆ. ಅಲ್ಲಾಹು ತನ್ನ ದಾಸರನ್ನು ನೋಡುತ್ತಿದ್ದಾನೆ."

---

ٱلَّذِينَ يَقُولُونَ رَبَّنَآ إِنَّنَآ ءَامَنَّا فَٱغۡفِرۡ لَنَا
ذُنُوبَنَا وَقِنَا عَذَابَ ٱلنَّارِ ١٦

16. ಅವರು (ದೇವಭಯವುಳ್ಳವರು) ಯಾರೆಂದರೆ: "ಓ ನಮ್ಮ ಪರಿಪಾಲಕನೇ! ನಾವು ವಿಶ್ವಾಸವಿಟ್ಟಿದ್ದೇವೆ. ಆದ್ದರಿಂದ ನಮ್ಮ ಪಾಪಗಳನ್ನು ಕ್ಷಮಿಸು ಮತ್ತು ನಮ್ಮನ್ನು ನರಕ ಶಿಕ್ಷೆಯಿಂದ ರಕ್ಷಿಸು"

---

[1] ಇಲ್ಲಿ ಸತ್ಯನಿಷೇಧಿಗಳು ಎಂದರೆ ಯಹೂದಿಗಳು. ಈ ಭವಿಷ್ಯ ನುಡಿಯು ಸ್ವಲ್ಪ ಸಮಯದಲ್ಲೇ ಸತ್ಯವಾಗಿದೆ. ಯಹೂದಿಗಳ ಬನೂ ಕೈನುಕಾ ಮತ್ತು ಬನೂ ನದೀರ್ ಗೋತ್ರಗಳನ್ನು ಗಡೀಪಾರು ಮಾಡಲಾಯಿತು ಹಾಗೂ ಬನೂ ಕುರೈಝ ಗೋತ್ರವನ್ನು ಸಂಹಾರ ಮಾಡಲಾಯಿತು. ನಂತರ ಖೈಬರ್ ಕೋಟೆಯನ್ನು ವಶಪಡಿಸಲಾಯಿತು.

ಎಂದು ಹೇಳುವವರು.

17. ಅವರು ತಾಳ್ಮೆಯುಳ್ಳವರು, ಸತ್ಯವಂತರು, ವಿಧೇಯರು, ಅಲ್ಲಾಹನ ಮಾರ್ಗದಲ್ಲಿ ಖರ್ಚು ಮಾಡುವವರು ಮತ್ತು ರಾತ್ರಿಯ ಅಂತ್ಯ ಯಾಮಗಳಲ್ಲಿ ಕ್ಷಮೆಯಾಚಿಸುವವರು.

ٱلصَّٰبِرِينَ وَٱلصَّٰدِقِينَ وَٱلۡقَٰنِتِينَ وَٱلۡمُنفِقِينَ وَٱلۡمُسۡتَغۡفِرِينَ بِٱلۡأَسۡحَارِ ١٧

18. ತನ್ನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ ಎಂದು ಅಲ್ಲಾಹು ಸಾಕ್ಷಿವಹಿಸಿದ್ದಾನೆ, ಅವನ ದೇವದೂತರುಗಳು ಮತ್ತು ವಿದ್ವಾಂಸರು (ಕೂಡ ಸಾಕ್ಷಿವಹಿಸಿದ್ದಾರೆ). ಅವನು ಸ್ಥಿರವಾಗಿ ನ್ಯಾಯವನ್ನು ಪಾಲಿಸುವವನು. ಪ್ರಬಲನು ಮತ್ತು ವಿವೇಕಪೂರ್ಣನಾದ ಅಲ್ಲಾಹನ ಹೊರತು ಆರಾಧನೆಗೆ ಅರ್ಹರಾದ ಬೇರೆ ದೇವರಿಲ್ಲ.

شَهِدَ ٱللَّهُ أَنَّهُۥ لَآ إِلَٰهَ إِلَّا هُوَ وَٱلۡمَلَٰٓئِكَةُ وَأُوْلُواْ ٱلۡعِلۡمِ قَآئِمَۢا بِٱلۡقِسۡطِۚ لَآ إِلَٰهَ إِلَّا هُوَ ٱلۡعَزِيزُ ٱلۡحَكِيمُ ١٨

19. ನಿಶ್ಚಯವಾಗಿಯೂ ಅಲ್ಲಾಹನ ಬಳಿ (ಸ್ವೀಕಾರವಾಗುವ) ಧರ್ಮವು ಇಸ್ಲಾಮ್ ಮಾತ್ರ. ಗ್ರಂಥ ನೀಡಲಾದವರು ಅವರಿಗೆ ಜ್ಞಾನವು ಬಂದ ಬಳಿಕವೇ ಹೊರತು ಭಿನ್ನರಾಗಲಿಲ್ಲ. ಅದು ಅವರು ಪರಸ್ಪರ ಹೊಂದಿದ್ದ ವಿದ್ವೇಷ ಮತ್ತು ಅಸೂಯೆಯ ಕಾರಣದಿಂದಾಗಿತ್ತು. ಯಾರು ಅಲ್ಲಾಹನ ದೃಷ್ಟಾಂತಗಳನ್ನು ನಿಷೇಧಿಸುತ್ತಾರೋ—ನಿಶ್ಚಯವಾಗಿಯೂ ಅಲ್ಲಾಹು ಅವರನ್ನು ಅತಿ ಶೀಘ್ರವಾಗಿ ವಿಚಾರಣೆ ಮಾಡುವನು.

إِنَّ ٱلدِّينَ عِندَ ٱللَّهِ ٱلۡإِسۡلَٰمُۗ وَمَا ٱخۡتَلَفَ ٱلَّذِينَ أُوتُواْ ٱلۡكِتَٰبَ إِلَّا مِنۢ بَعۡدِ مَا جَآءَهُمُ ٱلۡعِلۡمُ بَغۡيَۢا بَيۡنَهُمۡۗ وَمَن يَكۡفُرۡ بِـَٔايَٰتِ ٱللَّهِ فَإِنَّ ٱللَّهَ سَرِيعُ ٱلۡحِسَابِ ١٩

20. ಅದರ ನಂತರವೂ ಅವರು ನಿಮ್ಮೊಡನೆ ತರ್ಕ ಮಾಡಿದರೆ ನೀವು ಹೇಳಿರಿ: "ನಾನು ಮತ್ತು ನನ್ನ ಅನುಯಾಯಿಗಳು ನಮ್ಮ ಮುಖಗಳನ್ನು ಸಂಪೂರ್ಣವಾಗಿ ಅಲ್ಲಾಹನಿಗೆ ಶರಣಾಗಿಸಿದ್ದೇವೆ." ಗ್ರಂಥ ನೀಡಲಾದವರೊಂದಿಗೆ ಮತ್ತು ಅನಕ್ಷರಸ್ಥರೊಂದಿಗೆ (ಅರಬ್ ಬಹುದೇವಾರಾಧಕರೊಂದಿಗೆ) ಕೇಳಿರಿ: "ನೀವು ಶರಣಾಗಿದ್ದೀರಾ?" ಅವರು ಶರಣಾದರೆ ಅವರು ಸನ್ಮಾರ್ಗವನ್ನು ಪಡೆಯುತ್ತಾರೆ. ಆದರೆ ಅವರು ಮುಖ ತಿರುಗಿಸಿ ನಡೆದರೆ ನಿಮ್ಮ ಕರ್ತವ್ಯವು ಅವರಿಗೆ ಸಂದೇಶವನ್ನು ತಲುಪಿಸಿಕೊಡುವುದು ಮಾತ್ರ. ಅಲ್ಲಾಹು ತನ್ನ ದಾಸರನ್ನು ನೋಡುತ್ತಿದ್ದಾನೆ.

فَإِنۡ حَآجُّوكَ فَقُلۡ أَسۡلَمۡتُ وَجۡهِيَ لِلَّهِ وَمَنِ ٱتَّبَعَنِۗ وَقُل لِّلَّذِينَ أُوتُواْ ٱلۡكِتَٰبَ وَٱلۡأُمِّيِّـۧنَ ءَأَسۡلَمۡتُمۡۚ فَإِنۡ أَسۡلَمُواْ فَقَدِ ٱهۡتَدَواْۖ وَّإِن تَوَلَّوۡاْ فَإِنَّمَا عَلَيۡكَ ٱلۡبَلَٰغُۗ وَٱللَّهُ بَصِيرُۢ بِٱلۡعِبَادِ ٢٠

21. ಅಲ್ಲಾಹನ ವಚನಗಳನ್ನು ನಿಷೇಧಿಸುವವರು, ಪ್ರವಾದಿಗಳನ್ನು ಅನ್ಯಾಯವಾಗಿ ಕೊಲ್ಲುವವರು ಮತ್ತು ನ್ಯಾಯ ಪಾಲಿಸಲು ಆದೇಶಿಸುವ ಜನರನ್ನು ಹತ್ಯೆ ಮಾಡುವವರು ಯಾರೋ—ಅವರಿಗೆ ಯಾತನಾಮಯ ಶಿಕ್ಷೆಯ ಬಗ್ಗೆ ಸುವಾರ್ತೆಯನ್ನು ತಿಳಿಸಿರಿ.

إِنَّ ٱلَّذِينَ يَكۡفُرُونَ بِـَٔايَٰتِ ٱللَّهِ وَيَقۡتُلُونَ ٱلنَّبِيِّـۧنَ بِغَيۡرِ حَقّٖ وَيَقۡتُلُونَ ٱلَّذِينَ يَأۡمُرُونَ بِٱلۡقِسۡطِ مِنَ ٱلنَّاسِ فَبَشِّرۡهُم بِعَذَابٍ أَلِيمٍ ٢١

22. ಇಹಲೋಕದಲ್ಲೂ, ಪರಲೋಕದಲ್ಲೂ ಅವರ ಕರ್ಮಗಳು ನಿಷ್ಫಲವಾಗಿವೆ. ಅವರಿಗೆ ಯಾವುದೇ ಸಹಾಯಕರಿಲ್ಲ.

أُوْلَٰٓئِكَ ٱلَّذِينَ حَبِطَتۡ أَعۡمَٰلُهُمۡ فِي ٱلدُّنۡيَا وَٱلۡأٓخِرَةِ وَمَا لَهُم مِّن نَّٰصِرِينَ ٢٢

23. ಗ್ರಂಥದಿಂದ ಒಂದು ಪಾಲು ನೀಡಲಾದವರನ್ನು (ಯಹೂದಿಗಳನ್ನು) ನೀವು ನೋಡಿಲ್ಲವೇ? ಅವರ (ಯಹೂದಿಗಳ) ನಡುವೆ ತೀರ್ಪು ನೀಡಲು ಅವರನ್ನು ಅಲ್ಲಾಹನ ಗ್ರಂಥಕ್ಕೆ ಕರೆಯಲಾಗುತ್ತದೆ. ಅದರ ನಂತರವೂ ಅವರಲ್ಲೊಂದು ಗುಂಪು ಮುಖ ತಿರುಗಿಸಿ ವಿಮುಖರಾಗುತ್ತಾರೆ.

أَلَمۡ تَرَ إِلَى ٱلَّذِينَ أُوتُواْ نَصِيبٗا مِّنَ ٱلۡكِتَٰبِ يُدۡعَوۡنَ إِلَىٰ كِتَٰبِ ٱللَّهِ لِيَحۡكُمَ بَيۡنَهُمۡ ثُمَّ يَتَوَلَّىٰ فَرِيقٞ مِّنۡهُمۡ وَهُم مُّعۡرِضُونَ ٢٣

24. ಅದೇಕೆಂದರೆ ಅವರು ಹೇಳುತ್ತಾರೆ: "ಬೆರಳೆಣಿಕೆಯ ಕೆಲವು ದಿನಗಳ ಹೊರತು ನರಕಾಗ್ನಿಯು ನಮ್ಮನ್ನು ಸುಡುವುದಿಲ್ಲ." ಅವರು ಏನು ಕಲ್ಪಿಸಿ ಹೇಳುತ್ತಿದ್ದಾರೋ ಅದು ಅವರನ್ನು ಅವರ ಧರ್ಮದ ವಿಷಯದಲ್ಲಿ ಮರುಳುಗೊಳಿಸಿದೆ.

ذَٰلِكَ بِأَنَّهُمۡ قَالُواْ لَن تَمَسَّنَا ٱلنَّارُ إِلَّآ أَيَّامٗا مَّعۡدُودَٰتٖۖ وَغَرَّهُمۡ فِي دِينِهِم مَّا كَانُواْ يَفۡتَرُونَ ٢٤

25. ಯಾವುದೇ ಸಂಶಯವಿಲ್ಲದ ಒಂದು ದಿನ (ಪುನರುತ್ಥಾನ ದಿನ) ನಾವು ಅವರನ್ನು ಒಟ್ಟುಗೂಡಿಸಿದರೆ (ಅವರ ಸ್ಥಿತಿ) ಹೇಗಿರಬಹುದು? ಅಂದು ಪ್ರತಿಯೊಬ್ಬ ವ್ಯಕ್ತಿಗೂ ಅವನು ಮಾಡಿದ ಕರ್ಮಗಳ ಪ್ರತಿಫಲವನ್ನು ಪೂರ್ಣವಾಗಿ ನೀಡಲಾಗುವುದು. ಅವರಿಗೆ ಯಾವುದೇ ಅನ್ಯಾಯವಾಗುವುದಿಲ್ಲ.

فَكَيۡفَ إِذَا جَمَعۡنَٰهُمۡ لِيَوۡمٖ لَّا رَيۡبَ فِيهِ وَوُفِّيَتۡ كُلُّ نَفۡسٖ مَّا كَسَبَتۡ وَهُمۡ لَا يُظۡلَمُونَ ٢٥

26. ಹೇಳಿರಿ: "ಓ ಸಾರ್ವಭೌಮತ್ವದ ಒಡೆಯನಾದ ಅಲ್ಲಾಹನೇ! ನೀನು ಇಚ್ಛಿಸುವವರಿಗೆ ನೀನು ಆಧಿಪತ್ಯವನ್ನು ನೀಡುವೆ ಮತ್ತು ನೀನು ಇಚ್ಛಿಸುವವರಿಂದ ಆಧಿಪತ್ಯವನ್ನು ಕಸಿಯುವೆ. ನೀನು ಇಚ್ಛಿಸುವವರಿಗೆ ಪ್ರತಿಷ್ಠೆಯನ್ನು ನೀಡುವೆ ಮತ್ತು ನೀನು ಇಚ್ಛಿಸುವ-ವರನ್ನು ಅವಮಾನಕ್ಕೆ ಗುರಿಯಾಗಿಸುವೆ. ಒಳಿತುಗಳೆಲ್ಲವೂ ನಿನ್ನ ಕೈಯಲ್ಲಿದೆ. ನಿಶ್ಚಯವಾಗಿಯೂ ನೀನು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿರುವೆ.

قُلِ ٱللَّهُمَّ مَٰلِكَ ٱلۡمُلۡكِ تُؤۡتِي ٱلۡمُلۡكَ مَن تَشَآءُ وَتَنزِعُ ٱلۡمُلۡكَ مِمَّن تَشَآءُ وَتُعِزُّ مَن تَشَآءُ وَتُذِلُّ مَن تَشَآءُۖ بِيَدِكَ ٱلۡخَيۡرُۖ إِنَّكَ عَلَىٰ كُلِّ شَيۡءٖ قَدِيرٞ ٢٦

27. ನೀನು ರಾತ್ರಿಯನ್ನು ಹಗಲಿನಲ್ಲಿ ತೂರಿಸುವೆ ಮತ್ತು ಹಗಲನ್ನು ರಾತ್ರಿಯಲ್ಲಿ ತೂರಿಸುವೆ. ನಿರ್ಜೀವಿಯಿಂದ ಜೀವಿಯನ್ನು ಹೊರತರುವೆ ಮತ್ತು ಜೀವಿಯಿಂದ ನಿರ್ಜೀವಿಯನ್ನು ಹೊರತರುವೆ. ನೀನು ಇಚ್ಛಿಸುವವರಿಗೆ ನೀನು ಲೆಕ್ಕವಿಲ್ಲದೆ ನೀಡುವೆ."

تُولِجُ ٱلَّيۡلَ فِي ٱلنَّهَارِ وَتُولِجُ ٱلنَّهَارَ فِي ٱلَّيۡلِۖ وَتُخۡرِجُ ٱلۡحَيَّ مِنَ ٱلۡمَيِّتِ وَتُخۡرِجُ ٱلۡمَيِّتَ مِنَ ٱلۡحَيِّۖ وَتَرۡزُقُ مَن تَشَآءُ بِغَيۡرِ حِسَابٖ ٢٧

28. ಸತ್ಯವಿಶ್ವಾಸಿಗಳು ಸತ್ಯವಿಶ್ವಾಸಿಗಳನ್ನು ಬಿಟ್ಟು ಸತ್ಯನಿಷೇಧಿಗಳನ್ನು

لَّا يَتَّخِذِ ٱلۡمُؤۡمِنُونَ ٱلۡكَٰفِرِينَ أَوۡلِيَآءَ مِن دُونِ

ಆಪ್ತಮಿತ್ರರನ್ನಾಗಿ ಸ್ವೀಕರಿಸಬಾರದು.[1] ಯಾರು ಹಾಗೆ ಮಾಡುತ್ತಾನೋ ಅವನಿಗೆ ಅಲ್ಲಾಹನಿಂದ ಯಾವುದೇ ರಕ್ಷಣೆಯಿಲ್ಲ. ಆದರೆ ಅವರ ಕೆಡುಕಿನಿಂದ ಪಾರಾಗುವ ಉದ್ದೇಶವಿದ್ದರೆ ಹೊರತು.[2] ಅಲ್ಲಾಹು ತನ್ನ ಬಗ್ಗೆ ನಿಮ್ಮನ್ನು ಎಚ್ಚರಿಸುತ್ತಿದ್ದಾನೆ. (ಎಲ್ಲರೂ) ಅಲ್ಲಾಹನ ಬಳಿಗೇ ಮರಳಬೇಕಾಗಿದೆ.

ٱلْمُؤْمِنِينَ ۖ وَمَن يَفْعَلْ ذَٰلِكَ فَلَيْسَ مِنَ ٱللَّهِ فِى شَىْءٍ إِلَّآ أَن تَتَّقُوا۟ مِنْهُمْ تُقَىٰةً ۗ وَيُحَذِّرُكُمُ ٱللَّهُ نَفْسَهُۥ ۗ وَإِلَى ٱللَّهِ ٱلْمَصِيرُ ﴿٢٨﴾

---

29. ಹೇಳಿರಿ: “ನೀವು ನಿಮ್ಮ ಎದೆಗಳಲ್ಲಿರುವುದನ್ನು ಮುಚ್ಚಿಟ್ಟರೂ ಅಥವಾ ಬಹಿರಂಗಪಡಿಸಿದರೂ ಅಲ್ಲಾಹು ಅದನ್ನು ತಿಳಿಯುತ್ತಾನೆ. ಅವನು ಭೂಮ್ಯಾಕಾಶಗಳಲ್ಲಿರುವ ಎಲ್ಲವನ್ನೂ ತಿಳಿಯುತ್ತಾನೆ. ಅಲ್ಲಾಹು ಎಲ್ಲ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.”

قُلْ إِن تُخْفُوا۟ مَا فِى صُدُورِكُمْ أَوْ تُبْدُوهُ يَعْلَمْهُ ٱللَّهُ ۗ وَيَعْلَمُ مَا فِى ٱلسَّمَٰوَٰتِ وَمَا فِى ٱلْأَرْضِ ۗ وَٱللَّهُ عَلَىٰ كُلِّ شَىْءٍ قَدِيرٌ ﴿٢٩﴾

---

30. ಪ್ರತಿಯೊಬ್ಬನೂ ತಾನು ಮಾಡಿದ ಒಳಿತನ್ನು ಮತ್ತು ತಾನು ಮಾಡಿದ ಕೆಡುಕನ್ನು ತನ್ನ ಮುಂದೆ ಪ್ರದರ್ಶಿಸಿಟ್ಟಿರುವುದನ್ನು ನೋಡುವ ದಿನ. ತನ್ನ ಮತ್ತು ಅದರ (ಕೆಡುಕಿನ) ನಡುವೆ ವಿದೂರ ಅಂತರವಿರುತ್ತಿದ್ದರೆ ಎಷ್ಟು ಚೆನ್ನಾಗಿತ್ತು ಎಂದು ಅವನು ಹಾರೈಸುವನು. ಅಲ್ಲಾಹು ತನ್ನ ಬಗ್ಗೆ ನಿಮ್ಮನ್ನು ಎಚ್ಚರಿಸುತ್ತಿದ್ದಾನೆ. ಅಲ್ಲಾಹನಿಗೆ ದಾಸರ ಮೇಲೆ ಅಪಾರ ಸಹಾನುಭೂತಿಯಿದೆ.

يَوْمَ تَجِدُ كُلُّ نَفْسٍ مَّا عَمِلَتْ مِنْ خَيْرٍ مُّحْضَرًا وَمَا عَمِلَتْ مِن سُوٓءٍ تَوَدُّ لَوْ أَنَّ بَيْنَهَا وَبَيْنَهُۥٓ أَمَدًۢا بَعِيدًا ۗ وَيُحَذِّرُكُمُ ٱللَّهُ نَفْسَهُۥ ۗ وَٱللَّهُ رَءُوفٌۢ بِٱلْعِبَادِ ﴿٣٠﴾

---

31. ಹೇಳಿರಿ: “ನೀವು ಅಲ್ಲಾಹನನ್ನು ಪ್ರೀತಿಸುವುದಾದರೆ ನನ್ನನ್ನು ಅನುಸರಿಸಿರಿ. ಅಲ್ಲಾಹು ನಿಮ್ಮನ್ನು ಪ್ರೀತಿಸುತ್ತಾನೆ ಮತ್ತು ನಿಮ್ಮ ಪಾಪಗಳನ್ನು ಕ್ಷಮಿಸುತ್ತಾನೆ. ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.”

قُلْ إِن كُنتُمْ تُحِبُّونَ ٱللَّهَ فَٱتَّبِعُونِى يُحْبِبْكُمُ ٱللَّهُ وَيَغْفِرْ لَكُمْ ذُنُوبَكُمْ ۗ وَٱللَّهُ غَفُورٌ رَّحِيمٌ ﴿٣١﴾

---

32. ಹೇಳಿರಿ: “ನೀವು ಅಲ್ಲಾಹನ ಮತ್ತು ಸಂದೇಶವಾಹಕರ ಆಜ್ಞಾಪಾಲನೆ ಮಾಡಿರಿ.” ಅವರೇನಾದರೂ ವಿಮುಖರಾದರೆ—ನಿಶ್ಚಯವಾಗಿಯೂ ಅಲ್ಲಾಹು ಸತ್ಯನಿಷೇಧಿಗಳನ್ನು ಇಷ್ಟಪಡುವುದಿಲ್ಲ.

قُلْ أَطِيعُوا۟ ٱللَّهَ وَٱلرَّسُولَ ۖ فَإِن تَوَلَّوْا۟ فَإِنَّ ٱللَّهَ لَا يُحِبُّ ٱلْكَٰفِرِينَ ﴿٣٢﴾

---

33. ನಿಶ್ಚಯವಾಗಿಯೂ ಅಲ್ಲಾಹು ಸರ್ವಲೋಕಗಳ ಜನರ ಪೈಕಿ ಆದಮ್, ನೂಹ್, ಇಬ್ರಾಹೀಮರ ಕುಟುಂಬ ಮತ್ತು ಇಮ್ರಾನರ[3] ಕುಟುಂಬವನ್ನು ಆರಿಸಿದ್ದಾನೆ.

إِنَّ ٱللَّهَ ٱصْطَفَىٰٓ ءَادَمَ وَنُوحًا وَءَالَ إِبْرَٰهِيمَ وَءَالَ عِمْرَٰنَ عَلَى ٱلْعَٰلَمِينَ ﴿٣٣﴾

---

[1] ಇಲ್ಲಿ ಸತ್ಯನಿಷೇಧಿಗಳು ಎಂದರೆ ಸತ್ಯವಿಶ್ವಾಸಿಗಳೊಂದಿಗೆ ವೈರ ಮತ್ತು ದ್ವೇಷ ಕಟ್ಟಿಕೊಂಡಿರುವ ಸತ್ಯನಿಷೇಧಿಗಳು. ಆದರೆ ಸತ್ಯವಿಶ್ವಾಸಿಗಳೊಂದಿಗೆ ವೈರತ್ವವಿಲ್ಲದ, ದ್ವೇಷವನ್ನು ಹೊಂದಿಲ್ಲದ ಸತ್ಯನಿಷೇಧಿಗಳೊಂದಿಗೆ ಉತ್ತಮ ರೀತಿಯಲ್ಲಿ ವರ್ತಿಸುವುದರಲ್ಲಿ ತೊಂದರೆಯಿಲ್ಲ.

[2] ಅಂದರೆ ಸತ್ಯನಿಷೇಧಿಗಳೊಡನೆ ಸ್ನೇಹ ಮಾಡಿಕೊಳ್ಳದ ಹೊರತು ಅವರ ಹಿಂಸೆಯಿಂದ ಪಾರಾಗಲು ಸಾಧ್ಯವಿಲ್ಲದ ಸಂದರ್ಭಗಳಲ್ಲಿ ಬಾಹ್ಯವಾಗಿ ಅವರೊಡನೆ ಸ್ನೇಹ ಮಾಡಿಕೊಳ್ಳಬಹುದು. ಇದು ಸಾಮಾನ್ಯವಾಗಿ ಮುಸ್ಲಿಮೇತರ ದೇಶಗಳಲ್ಲಿ ವಾಸಿಸುವ ಮುಸಲ್ಮಾನರಿಗೆ ಸಂಬಂಧಿಸಿದ್ದಾಗಿದೆ.

[3] ಇಮ್ರಾನ್ ಮರ್ಯಮರ ತಂದೆ. ಪ್ರವಾದಿ ಈಸಾರ ಅಜ್ಜ. ಅವರ ಪತ್ನಿಯ ಹೆಸರು ಹನ್ನ.

34. ಅವರು ಒಬ್ಬರು ಇನ್ನೊಬ್ಬರ ವಂಶದಿಂದ ಬಂದವರು. ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

ذُرِّيَّةَۢ بَعۡضُهَا مِنۢ بَعۡضٖۗ وَٱللَّهُ سَمِيعٌ عَلِيمٌ ٣٤

35. ಇಮ್ರಾನರ ಪತ್ನಿ ಹೇಳಿದ ಸಂದರ್ಭ: “ಓ ನನ್ನ ಪರಿಪಾಲಕನೇ! ನನ್ನ ಗರ್ಭದಲ್ಲಿರುವುದನ್ನು ನಾನು ನಿನ್ನ ಹೆಸರಲ್ಲಿ ಸ್ವತಂತ್ರಗೊಳಿಸುವೆನೆಂದು[1] ಹರಕೆ ಹೊತ್ತಿದ್ದೇನೆ. ನೀನು ಅದನ್ನು ನನ್ನಿಂದ ಸ್ವೀಕರಿಸು. ನಿಶ್ಚಯವಾಗಿಯೂ ನೀನು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿರುವೆ.”

إِذۡ قَالَتِ ٱمۡرَأَتُ عِمۡرَٰنَ رَبِّ إِنِّي نَذَرۡتُ لَكَ مَا فِي بَطۡنِي مُحَرَّرٗا فَتَقَبَّلۡ مِنِّيٓۖ إِنَّكَ أَنتَ ٱلسَّمِيعُ ٱلۡعَلِيمُ ٣٥

36. ನಂತರ ಆಕೆ ಮಗುವಿಗೆ ಜನ್ಮ ನೀಡಿದಾಗ ಹೇಳಿದಳು: “ಓ ನನ್ನ ಪರಿಪಾಲಕನೇ! ನಾನು ಹೆಣ್ಣು ಮಗುವಿಗೆ ಜನ್ಮ ನೀಡಿದ್ದೇನೆ!” ಅವಳು ಯಾರಿಗೆ ಜನ್ಮ ನೀಡಿದ್ದಾಳೆಂದು ಅಲ್ಲಾಹನಿಗೆ ಚೆನ್ನಾಗಿ ತಿಳಿದಿದೆ. ಗಂಡು ಹೆಣ್ಣಿನಂತಲ್ಲ! “ನಾನು ಅವಳಿಗೆ ಮರ್ಯಮ್ ಎಂದು ಹೆಸರಿಟ್ಟಿದ್ದೇನೆ; ಅವಳನ್ನು ಮತ್ತು ಅವಳ ಸಂತಾನವನ್ನು ಬಹಿಷ್ಕೃತ ಶೈತಾನನಿಂದ ಕಾಪಾಡಲು ನಿನ್ನ ರಕ್ಷಣೆಗೆ ಒಪ್ಪಿಸುತ್ತೇನೆ.”

فَلَمَّا وَضَعَتۡهَا قَالَتۡ رَبِّ إِنِّي وَضَعۡتُهَآ أُنثَىٰ وَٱللَّهُ أَعۡلَمُ بِمَا وَضَعَتۡ وَلَيۡسَ ٱلذَّكَرُ كَٱلۡأُنثَىٰۖ وَإِنِّي سَمَّيۡتُهَا مَرۡيَمَ وَإِنِّيٓ أُعِيذُهَا بِكَ وَذُرِّيَّتَهَا مِنَ ٱلشَّيۡطَٰنِ ٱلرَّجِيمِ ٣٦

37. ಅವಳ ಪರಿಪಾಲಕ (ಅಲ್ಲಾಹು) ಅವಳನ್ನು ಉತ್ತಮ ರೀತಿಯಲ್ಲಿ ಸ್ವೀಕರಿಸಿ ಉತ್ತಮ ರೀತಿಯಲ್ಲಿ ಬೆಳೆಸಿದನು. ಅವಳ ಪಾಲನೆ-ಪೋಷಣೆ ಮಾಡುವ ಹೊಣೆಯನ್ನು ಝಕರಿಯ್ಯಾರಿಗೆ ಒಪ್ಪಿಸಿದನು. ಝಕರಿಯ್ಯಾ ಅವಳ ಕೋಣೆಗೆ ತೆರಳಿದಾಗಲೆಲ್ಲ ಅವಳ ಬಳಿ ಏನಾದರೊಂದು ಆಹಾರವನ್ನು ಕಾಣುತ್ತಿದ್ದರು. ಅವರು ಕೇಳಿದರು: “ಓ ಮರ್ಯಮ್! ಇದು ನಿನಗೆಲ್ಲಿಂದ ದೊರೆಯುತ್ತದೆ?” ಅವಳು ಉತ್ತರಿಸಿದಳು: “ಅದು ಅಲ್ಲಾಹನ ಬಳಿಯಿಂದ. ನಿಶ್ಚಯವಾಗಿಯೂ ಅಲ್ಲಾಹು ಅವನು ಇಚ್ಛಿಸುವವರಿಗೆ ಲೆಕ್ಕವಿಲ್ಲದೆ ದಯಪಾಲಿಸುತ್ತಾನೆ.”

فَتَقَبَّلَهَا رَبُّهَا بِقَبُولٍ حَسَنٖ وَأَنۢبَتَهَا نَبَاتًا حَسَنٗا وَكَفَّلَهَا زَكَرِيَّاۖ كُلَّمَا دَخَلَ عَلَيۡهَا زَكَرِيَّا ٱلۡمِحۡرَابَ وَجَدَ عِندَهَا رِزۡقٗاۖ قَالَ يَٰمَرۡيَمُ أَنَّىٰ لَكِ هَٰذَاۖ قَالَتۡ هُوَ مِنۡ عِندِ ٱللَّهِۖ إِنَّ ٱللَّهَ يَرۡزُقُ مَن يَشَآءُ بِغَيۡرِ حِسَابٍ ٣٧

38. ಅಲ್ಲಿ ಝಕರಿಯ್ಯಾ ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಕರೆದು ಪ್ರಾರ್ಥಿಸಿದರು: “ಓ ನನ್ನ ಪರಿಪಾಲಕನೇ! ನಿನ್ನ ಕಡೆಯಿಂದ ನನಗೊಂದು ಪರಿಶುದ್ಧ ಸಂತಾನವನ್ನು ಕರುಣಿಸು. ನಿಶ್ಚಯವಾಗಿಯೂ ನೀನು ಪ್ರಾರ್ಥನೆಗೆ ಕಿವಿಗೊಡುವವನಾಗಿರುವೆ.”

هُنَالِكَ دَعَا زَكَرِيَّا رَبَّهُۥۖ قَالَ رَبِّ هَبۡ لِي مِن لَّدُنكَ ذُرِّيَّةٗ طَيِّبَةًۖ إِنَّكَ سَمِيعُ ٱلدُّعَآءِ ٣٨

39. ಅವರು ಕೋಣೆಯಲ್ಲಿ ನಿಂತು ನಮಾಝ್ ಮಾಡುತ್ತಿದ್ದಾಗ, ದೇವದೂತರುಗಳು ಅವರನ್ನು ಕರೆದು ಹೇಳಿದರು:

فَنَادَتۡهُ ٱلۡمَلَٰٓئِكَةُ وَهُوَ قَآئِمٞ يُصَلِّي فِي ٱلۡمِحۡرَابِ أَنَّ ٱللَّهَ يُبَشِّرُكَ بِيَحۡيَىٰ مُصَدِّقَۢا بِكَلِمَةٖ مِّنَ

---

[1] ಸ್ವತಂತ್ರಗೊಳಿಸುವುದು ಎಂದರೆ ಬೈತುಲ್ ಮುಕದ್ದಿಸ್‌ನ ಸೇವೆ ಮಾಡಲು ಬಿಟ್ಟುಬಿಡುವುದು.

“ನಿಶ್ಚಯವಾಗಿಯೂ ಅಲ್ಲಾಹು ನಿಮಗೆ ಯಹ್ಯಾ (ಎಂಬ ಮಗುವಿ)ನ ಸುವಾರ್ತೆಯನ್ನು ತಿಳಿಸುತ್ತಿದ್ದಾನೆ. ಅವರು (ಯಹ್ಯಾ) ಅಲ್ಲಾಹನ ಕಡೆಯ ವಚನವನ್ನು ದೃಢೀಕರಿಸುವವರು, ಸರದಾರರು, ಆತ್ಮಸಂಯಮವುಳ್ಳವರು ಮತ್ತು ನೀತಿವಂತರಲ್ಲಿ ಸೇರಿದ ಪ್ರವಾದಿಯಾಗಿರುವರು.”

ٱللَّهِ وَسَيِّدًا وَحَصُورًا وَنَبِيًّا مِّنَ ٱلصَّٰلِحِينَ ٣٩

---

40. ಝಕರಿಯ್ಯಾ ಕೇಳಿದರು: “ಓ ನನ್ನ ಪರಿಪಾಲಕನೇ! ನನಗೆ ಮಗು ಹುಟ್ಟುವುದು ಹೇಗೆ? ನಾನು ಮುದುಕನಾಗಿದ್ದೇನೆ ಮತ್ತು ನನ್ನ ಹೆಂಡತಿ ಬಂಜೆಯಾಗಿದ್ದಾಳೆ.” ಅಲ್ಲಾಹು ಹೇಳಿದನು: “ಹಾಗೆಯೇ ಆಗಿದೆ. ಅಲ್ಲಾಹು ಅವನು ಇಚ್ಛಿಸುವುದನ್ನು ಮಾಡುತ್ತಾನೆ.”

قَالَ رَبِّ أَنَّىٰ يَكُونُ لِى غُلَٰمٌ وَقَدْ بَلَغَنِىَ
ٱلْكِبَرُ وَٱمْرَأَتِى عَاقِرٌ ۖ قَالَ كَذَٰلِكَ ٱللَّهُ يَفْعَلُ
مَا يَشَآءُ ٤٠

---

41. ಝಕರಿಯ್ಯಾ ಹೇಳಿದರು: “ಓ ನನ್ನ ಪರಿಪಾಲಕನೇ! ನನಗೊಂದು ದೃಷ್ಟಾಂತವನ್ನು ಮಾಡಿ ತೋರಿಸು.” ಅಲ್ಲಾಹು ಹೇಳಿದನು: “ನಿಮಗಿರುವ ದೃಷ್ಟಾಂತವೇನೆಂದರೆ, ನೀವು ಮೂರು ದಿನಗಳ ಕಾಲ ಜನರೊಡನೆ ಸನ್ನೆಯ ಮೂಲಕವಲ್ಲದೆ ಮಾತನಾಡುವುದಿಲ್ಲ. ನೀವು ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಅತ್ಯಧಿಕವಾಗಿ ಸ್ಮರಿಸಿರಿ ಮತ್ತು ಸಂಜೆ ಹಾಗೂ ಮುಂಜಾನೆಗಳಲ್ಲಿ ಅವನ ಪರಿಶುದ್ಧಿಯನ್ನು ಕೊಂಡಾಡಿರಿ.”

قَالَ رَبِّ ٱجْعَل لِّىٓ ءَايَةً ۖ قَالَ ءَايَتُكَ أَلَّا تُكَلِّمَ
ٱلنَّاسَ ثَلَٰثَةَ أَيَّامٍ إِلَّا رَمْزًا ۗ وَٱذْكُر رَّبَّكَ كَثِيرًا
وَسَبِّحْ بِٱلْعَشِىِّ وَٱلْإِبْكَٰرِ ٤١

---

42. ದೇವದೂತರುಗಳು ಹೇಳಿದ ಸಂದರ್ಭ: “ಓ ಮರ್ಯಮ್! ನಿಶ್ಚಯವಾಗಿಯೂ ಅಲ್ಲಾಹು ನಿಮ್ಮನ್ನು ವಿಶೇಷವಾಗಿ ಆರಿಸಿದ್ದಾನೆ. ನಿಮಗೆ ಪರಿಶುದ್ಧಿಯನ್ನು ದಯಪಾಲಿಸಿದ್ದಾನೆ ಮತ್ತು ಸರ್ವಲೋಕಗಳ ಮಹಿಳೆಯರಲ್ಲಿ ನಿಮ್ಮನ್ನು ವಿಶೇಷವಾಗಿ ಆರಿಸಿದ್ದಾನೆ.

وَإِذْ قَالَتِ ٱلْمَلَٰٓئِكَةُ يَٰمَرْيَمُ إِنَّ ٱللَّهَ ٱصْطَفَىٰكِ
وَطَهَّرَكِ وَٱصْطَفَىٰكِ عَلَىٰ نِسَآءِ ٱلْعَٰلَمِينَ ٤٢

---

43. ಓ ಮರ್ಯಮ್! ನೀವು ನಿಮ್ಮ ಪರಿಪಾಲಕನಿಗೆ ವಿಧೇಯರಾಗಿರಿ; ಸಾಷ್ಟಾಂಗ ಮಾಡಿರಿ ಮತ್ತು ತಲೆಬಾಗುವವರೊಂದಿಗೆ ತಲೆಬಾಗಿರಿ.”

يَٰمَرْيَمُ ٱقْنُتِى لِرَبِّكِ وَٱسْجُدِى وَٱرْكَعِى مَعَ
ٱلرَّٰكِعِينَ ٤٣

---

44. ಇವೆಲ್ಲವೂ ಅದೃಶ್ಯ ಸಮಾಚಾರಗಳಾಗಿದ್ದು ನಾವು ನಿಮಗೆ ಇದನ್ನು ದೇವವಾಣಿಯ ಮೂಲಕ ತಿಳಿಸುತ್ತಿದ್ದೇವೆ. ಮರ್ಯಮರ ಪಾಲನೆ-ಪೋಷಣೆಯನ್ನು ಯಾರು ವಹಿಸಿಕೊಳ್ಳಬೇಕೆಂದು ನಿರ್ಧರಿಸಲು ಅವರು ತಮ್ಮ ಲೇಖನಿಗಳನ್ನು ಎಸೆದ ಸಂದರ್ಭದಲ್ಲಿ ನೀವು ಅವರ ಬಳಿಯಿರಲಿಲ್ಲ. ಅವರು ತರ್ಕಿಸುತ್ತಿರುವಾಗಲೂ ನೀವು ಅವರ ಬಳಿಯಿರಲಿಲ್ಲ.

ذَٰلِكَ مِنْ أَنۢبَآءِ ٱلْغَيْبِ نُوحِيهِ إِلَيْكَ ۚ وَمَا كُنتَ
لَدَيْهِمْ إِذْ يُلْقُونَ أَقْلَٰمَهُمْ أَيُّهُمْ يَكْفُلُ مَرْيَمَ
وَمَا كُنتَ لَدَيْهِمْ إِذْ يَخْتَصِمُونَ ٤٤

---

45. ದೇವದೂತರುಗಳು ಹೇಳಿದ ಸಂದರ್ಭ: “ಓ ಮರ್ಯಮ್!

إِذْ قَالَتِ ٱلْمَلَٰٓئِكَةُ يَٰمَرْيَمُ إِنَّ ٱللَّهَ يُبَشِّرُكِ

بِكَلِمَةٍ مِّنْهُ ٱسْمُهُ ٱلْمَسِيحُ عِيسَى ٱبْنُ مَرْيَمَ وَجِيهًا فِى ٱلدُّنْيَا وَٱلْـَٔاخِرَةِ وَمِنَ ٱلْمُقَرَّبِينَ ﴿٤٥﴾

ನಿಶ್ಚಯವಾಗಿಯೂ ಅಲ್ಲಾಹು ತನ್ನ ಒಂದು ವಚನದ ಬಗ್ಗೆ ನಿಮಗೆ ಸುವಾರ್ತೆಯನ್ನು ತಿಳಿಸುತ್ತಿದ್ದಾನೆ. ಅವರ ಹೆಸರು ಮರ್ಯಮರ ಮಗ ಮಸೀಹ್ ಈಸಾ. ಅವರು ಇಹಲೋಕದಲ್ಲಿ ಮತ್ತು ಪರಲೋಕದಲ್ಲಿ ಪ್ರತಿಷ್ಠಿತರಾಗಿರುವರು ಮತ್ತು ಅಲ್ಲಾಹನ ಸಾಮೀಪ್ಯ ಗಳಿಸಿದವರಲ್ಲಿ ಸೇರಿದವರಾಗಿರುವರು.

---

وَيُكَلِّمُ ٱلنَّاسَ فِى ٱلْمَهْدِ وَكَهْلًا وَمِنَ ٱلصَّـٰلِحِينَ ﴿٤٦﴾

46. ಅವರು ತೊಟ್ಟಿಲಲ್ಲಿರುವಾಗ ಮತ್ತು ಮಧ್ಯವಯಸ್ಕನಾಗಿರುವಾಗ[1] ಜನರೊಡನೆ ಮಾತನಾಡುವರು. ಅವರು ನೀತಿವಂತರಲ್ಲಿ ಸೇರಿದವರಾಗಿರುವರು.”

---

قَالَتْ رَبِّ أَنَّىٰ يَكُونُ لِى وَلَدٌ وَلَمْ يَمْسَسْنِى بَشَرٌ ۖ قَالَ كَذَٰلِكِ ٱللَّهُ يَخْلُقُ مَا يَشَآءُ ۚ إِذَا قَضَىٰٓ أَمْرًا فَإِنَّمَا يَقُولُ لَهُۥ كُن فَيَكُونُ ﴿٤٧﴾

47. ಮರ್ಯಮ್ ಕೇಳಿದರು: “ಓ ನನ್ನ ಪರಿಪಾಲಕನೇ! ನನಗೆ ಮಗುವಾಗುವುದು ಹೇಗೆ? ಯಾವುದೇ ಪುರುಷನು ನನ್ನನ್ನು ಸ್ಪರ್ಶಿಸಿಲ್ಲವಲ್ಲ.” ಅಲ್ಲಾಹು ಹೇಳಿದನು: “ಹಾಗೆಯೇ ಆಗಿದೆ. ಅಲ್ಲಾಹು ಅವನು ಇಚ್ಛಿಸುವುದನ್ನು ಸೃಷ್ಟಿಸುತ್ತಾನೆ. ಅವನು ಒಂದು ವಿಷಯವನ್ನು ತೀರ್ಮಾನಿಸಿದರೆ ಅದರೊಡನೆ ಉಂಟಾಗು ಎನ್ನುತ್ತಾನೆ. ಆಗ ಅದು ಉಂಟಾಗುತ್ತದೆ!

---

وَيُعَلِّمُهُ ٱلْكِتَـٰبَ وَٱلْحِكْمَةَ وَٱلتَّوْرَىٰةَ وَٱلْإِنجِيلَ ﴿٤٨﴾

48. ಅವನು ಅವರಿಗೆ ಗ್ರಂಥವನ್ನು, ವಿವೇಕವನ್ನು, ತೌರಾತನ್ನು ಮತ್ತು ಇಂಜೀಲನ್ನು ಕಲಿಸಿಕೊಡುವನು.

---

وَرَسُولًا إِلَىٰ بَنِىٓ إِسْرَٰٓءِيلَ أَنِّى قَدْ جِئْتُكُم بِـَٔايَةٍ مِّن رَّبِّكُمْ ۖ أَنِّىٓ أَخْلُقُ لَكُم مِّنَ ٱلطِّينِ كَهَيْـَٔةِ ٱلطَّيْرِ فَأَنفُخُ فِيهِ فَيَكُونُ طَيْرًۢا بِإِذْنِ ٱللَّهِ ۖ وَأُبْرِئُ ٱلْأَكْمَهَ وَٱلْأَبْرَصَ وَأُحْىِ ٱلْمَوْتَىٰ بِإِذْنِ ٱللَّهِ ۖ وَأُنَبِّئُكُم بِمَا تَأْكُلُونَ وَمَا تَدَّخِرُونَ فِى بُيُوتِكُمْ ۚ إِنَّ فِى ذَٰلِكَ لَـَٔايَةً لَّكُمْ إِن كُنتُم مُّؤْمِنِينَ ﴿٤٩﴾

49. ಅವರನ್ನು ಇಸ್ರಾಯೇಲ್ ಮಕ್ಕಳ ಬಳಿಗೆ ಸಂದೇಶವಾಹಕರಾಗಿ ಕಳುಹಿಸುವನು. (ಅವರು ಹೇಳುವರು:) “ನಾನು ನಿಮ್ಮ ಪರಿಪಾಲಕನ (ಅಲ್ಲಾಹನ) ವಚನದೊಂದಿಗೆ ನಿಮ್ಮ ಬಳಿಗೆ ಬಂದಿದ್ದೇನೆ. ನಾನು ನಿಮಗೆ ಜೇಡಿಮಣ್ಣಿನಿಂದ ಹಕ್ಕಿಯ ಆಕೃತಿಯನ್ನು ರಚಿಸುತ್ತೇನೆ. ನಂತರ ನಾನು ಅದರಲ್ಲಿ ಊದುತ್ತೇನೆ. ಆಗ ಅದು ಅಲ್ಲಾಹನ ಅಪ್ಪಣೆಯಿಂದ ಹಕ್ಕಿಯಾಗಿ ಮಾರ್ಪಡುತ್ತದೆ. ನಾನು ಅಲ್ಲಾಹನ ಅಪ್ಪಣೆಯಿಂದ ಹುಟ್ಟು ಕುರುಡನನ್ನು ಮತ್ತು ಕುಷ್ಠರೋಗಿಯನ್ನು ಗುಣಪಡಿಸುತ್ತೇನೆ ಹಾಗೂ ಸತ್ತವರಿಗೆ ಜೀವ ನೀಡುತ್ತೇನೆ. ನೀವು ತಿನ್ನುವುದನ್ನು ಮತ್ತು ನೀವು ನಿಮ್ಮ ಮನೆಗಳಲ್ಲಿ ಸಂಗ್ರಹಿಸಿಡುವುದನ್ನು ನಾನು ನಿಮಗೆ ತಿಳಿಸುತ್ತೇನೆ. ನೀವು ಸತ್ಯವಿಶ್ವಾಸಿಗಳಾಗಿದ್ದರೆ ನಿಶ್ಚಯವಾಗಿಯೂ ಇದರಲ್ಲಿ ನಿಮಗೆ ದೃಷ್ಟಾಂತವಿದೆ.

---

وَمُصَدِّقًا لِّمَا بَيْنَ يَدَىَّ مِنَ ٱلتَّوْرَىٰةِ وَلِأُحِلَّ لَكُم بَعْضَ ٱلَّذِى حُرِّمَ عَلَيْكُمْ ۚ وَجِئْتُكُم

50. ನಾನು ನನ್ನ ಮುಂದಿರುವ ತೌರಾತನ್ನು ದೃಢೀಕರಿಸುತ್ತೇನೆ. ನಿಮಗೆ ನಿಷೇಧಿಸಲಾಗಿರುವ ಕೆಲವು ವಸ್ತುಗಳನ್ನು ನಾನು ನಿಮಗೆ

[1] ಅಂದರೆ ಮಧ್ಯವಯಸ್ಕನಾಗಿರುವಾಗ ಅವರು ಪ್ರವಾದಿಯಾಗಿ ನೇಮಕಗೊಂಡು ದೇವವಾಣಿಯ ಆಧಾರದಲ್ಲಿ ಮಾತನಾಡುತ್ತಾರೆ.

ಧರ್ಮಸಮ್ಮತಗೊಳಿಸುತ್ತೇನೆ. ನಾನು ನಿಮಗೆ ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ದೃಷ್ಟಾಂತವನ್ನು ತಂದಿರುದ್ದೇನೆ. ಆದ್ದರಿಂದ ನೀವು ಅಲ್ಲಾಹನನ್ನು ಭಯಪಡಿರಿ ಮತ್ತು ನನ್ನನ್ನು ಅನುಸರಿಸಿರಿ.

بِـَٔايَةٍ مِّن رَّبِّكُمۡ فَٱتَّقُواْ ٱللَّهَ وَأَطِيعُونِ ﴿٥٠﴾

51. ನಿಶ್ಚಯವಾಗಿಯೂ ಅಲ್ಲಾಹು ನನ್ನ ಮತ್ತು ನಿಮ್ಮ ಪರಿಪಾಲಕನಾಗಿದ್ದಾನೆ. ಆದ್ದರಿಂದ ಅವನನ್ನು ಮಾತ್ರ ಆರಾಧಿಸಿರಿ. ಇದೇ ನೇರವಾದ ಮಾರ್ಗ.

إِنَّ ٱللَّهَ رَبِّي وَرَبُّكُمۡ فَٱعۡبُدُوهُۚ هَٰذَا صِرَٰطٞ مُّسۡتَقِيمٞ ﴿٥١﴾

52. ನಂತರ ಈಸಾರಿಗೆ ಅವರ ಸತ್ಯನಿಷೇಧದ ಅರಿವಾದಾಗ ಅವರು ಹೇಳಿದರು: “ಅಲ್ಲಾಹನ ಮಾರ್ಗದಲ್ಲಿ ನನಗೆ ಯಾರು ಸಹಾಯ ಮಾಡುತ್ತೀರಿ?” ಹವಾರಿಗಳು[1] ಹೇಳಿದರು: “ನಾವು ಅಲ್ಲಾಹನ ಮಾರ್ಗದಲ್ಲಿ ಸಹಾಯ ಮಾಡುತ್ತೇವೆ. ನಾವು ಅಲ್ಲಾಹನಲ್ಲಿ ವಿಶ್ವಾಸವಿಟ್ಟಿದ್ದೇವೆ. ನಾವು (ಅಲ್ಲಾಹನಿಗೆ) ಶರಣಾಗಿದ್ದೇವೆ ಎಂಬುದಕ್ಕೆ ನೀವು ಸಾಕ್ಷಿಯಾಗಿರಿ.”

فَلَمَّآ أَحَسَّ عِيسَىٰ مِنۡهُمُ ٱلۡكُفۡرَ قَالَ مَنۡ أَنصَارِيٓ إِلَى ٱللَّهِۖ قَالَ ٱلۡحَوَارِيُّونَ نَحۡنُ أَنصَارُ ٱللَّهِ ءَامَنَّا بِٱللَّهِ وَٱشۡهَدۡ بِأَنَّا مُسۡلِمُونَ ﴿٥٢﴾

53. “ಓ ನಮ್ಮ ಪರಿಪಾಲಕನೇ! ನೀನು ಅವತೀರ್ಣಗೊಳಿಸಿದ ಸಂದೇಶದಲ್ಲಿ ನಾವು ವಿಶ್ವಾಸವಿಟ್ಟಿದ್ದೇವೆ. ನಾವು ನಿನ್ನ ಸಂದೇಶವಾಹಕರನ್ನು ಅನುಸರಿಸಿದ್ದೇವೆ. ಆದ್ದರಿಂದ ನಮ್ಮನ್ನು ಸಾಕ್ಷಿಗಳಲ್ಲಿ ದಾಖಲಿಸು.”

رَبَّنَآ ءَامَنَّا بِمَآ أَنزَلۡتَ وَٱتَّبَعۡنَا ٱلرَّسُولَ فَٱكۡتُبۡنَا مَعَ ٱلشَّٰهِدِينَ ﴿٥٣﴾

54. ಅವರು (ಸತ್ಯನಿಷೇಧಿಗಳು) ತಂತ್ರಗಾರಿಕೆ ಮಾಡಿದರು. ಅಲ್ಲಾಹು ಕೂಡ ತಂತ್ರಗಾರಿಕೆ ಮಾಡಿದನು. ಅಲ್ಲಾಹು ತಂತ್ರಗಾರಿಕೆ ಮಾಡುವುದರಲ್ಲಿ ಅತ್ಯುತ್ತಮನಾಗಿದ್ದಾನೆ.

وَمَكَرُواْ وَمَكَرَ ٱللَّهُۖ وَٱللَّهُ خَيۡرُ ٱلۡمَٰكِرِينَ ﴿٥٤﴾

55. ಅಲ್ಲಾಹು ಹೇಳಿದ ಸಂದರ್ಭ: “ಓ ಈಸಾ! ನಿಶ್ಚಯವಾಗಿಯೂ ನಾನು ನಿಮ್ಮನ್ನು ಪೂರ್ಣವಾಗಿ ವಹಿಸಿಕೊಳ್ಳುವೆನು, ನಿಮ್ಮನ್ನು ನನ್ನ ಬಳಿಗೆ ಎತ್ತಿಕೊಳ್ಳುವೆನು ಮತ್ತು ಸತ್ಯನಿಷೇಧಿಗಳಿಂದ ನಿಮ್ಮನ್ನು ಪರಿಶುದ್ಧಗೊಳಿಸುವೆನು. ನಿಮ್ಮ ಅನುಯಾಯಿಗಳನ್ನು ಪುನರುತ್ಥಾನ ದಿನದವರೆಗೂ ಸತ್ಯನಿಷೇಧಿಗಳ ಮೇಲೆ ಪ್ರಬಲರನ್ನಾಗಿ ಮಾಡುವೆನು. ನಂತರ ನೀವು ನನ್ನ ಬಳಿಗೆ ಮರಳುವಿರಿ. ಆಗ ನೀವು ಭಿನ್ನಾಭಿಪ್ರಾಯ ತಳೆದ ವಿಷಯಗಳಲ್ಲಿ ನಾನು ನಿಮ್ಮ ನಡುವೆ ತೀರ್ಪು ನೀಡುವೆನು.

إِذۡ قَالَ ٱللَّهُ يَٰعِيسَىٰٓ إِنِّي مُتَوَفِّيكَ وَرَافِعُكَ إِلَيَّ وَمُطَهِّرُكَ مِنَ ٱلَّذِينَ كَفَرُواْ وَجَاعِلُ ٱلَّذِينَ ٱتَّبَعُوكَ فَوۡقَ ٱلَّذِينَ كَفَرُوٓاْ إِلَىٰ يَوۡمِ ٱلۡقِيَٰمَةِۖ ثُمَّ إِلَيَّ مَرۡجِعُكُمۡ فَأَحۡكُمُ بَيۡنَكُمۡ فِيمَا كُنتُمۡ فِيهِ تَخۡتَلِفُونَ ﴿٥٥﴾

56. ಸತ್ಯನಿಷೇಧಿಗಳು ಯಾರೋ—ಅವರಿಗೆ ನಾನು ಇಹಲೋಕದಲ್ಲೂ, ಪರಲೋಕದಲ್ಲೂ ಕಠೋರ ಶಿಕ್ಷೆಯನ್ನು ನೀಡುವೆನು. ಅವರಿಗೆ ಯಾವುದೇ ಸಹಾಯಕರಿಲ್ಲ.”

فَأَمَّا ٱلَّذِينَ كَفَرُواْ فَأُعَذِّبُهُمۡ عَذَابٗا شَدِيدٗا فِي ٱلدُّنۡيَا وَٱلۡأٓخِرَةِ وَمَا لَهُم مِّن نَّٰصِرِينَ ﴿٥٦﴾

[1] ಹವಾರಿಗಳು ಎಂದರೆ ಸಹಾಯಕರು.

57. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ—ಅವರಿಗೆ ಅಲ್ಲಾಹು ಅವರ ಪ್ರತಿಫಲವನ್ನು ಪೂರ್ಣವಾಗಿ ನೀಡುವನು. ಅಲ್ಲಾಹು ಅಕ್ರಮವೆಸಗುವವರನ್ನು ಇಷ್ಟಪಡುವುದಿಲ್ಲ.

وَأَمَّا ٱلَّذِينَ ءَامَنُواْ وَعَمِلُواْ ٱلصَّٰلِحَٰتِ فَيُوَفِّيهِمْ أُجُورَهُمْۗ وَٱللَّهُ لَا يُحِبُّ ٱلظَّٰلِمِينَ ﴿٥٧﴾

58. ನಾವು ನಿಮಗೆ ಓದಿಕೊಡುತ್ತಿರುವ ಈ ವಿಷಯಗಳು ಅಲ್ಲಾಹನ ವಚನಗಳಲ್ಲಿ ಮತ್ತು ವಿವೇಕಪೂರ್ಣ ಉಪದೇಶಗಳಲ್ಲಿ ಸೇರಿದ್ದಾಗಿವೆ.

ذَٰلِكَ نَتْلُوهُ عَلَيْكَ مِنَ ٱلْءَايَٰتِ وَٱلذِّكْرِ ٱلْحَكِيمِ ﴿٥٨﴾

59. ಅಲ್ಲಾಹನ ದೃಷ್ಟಿಯಲ್ಲಿ ಈಸಾರ ಉದಾಹರಣೆಯು ಆದಮರಂತೆ. ಅವನು ಆದಮರನ್ನು ಮಣ್ಣಿನಿಂದ ಸೃಷ್ಟಿಸಿದನು. ನಂತರ ಅವರೊಡನೆ ಉಂಟಾಗು ಎಂದನು. ಆಗ ಅವರು ಉಂಟಾದರು.

إِنَّ مَثَلَ عِيسَىٰ عِندَ ٱللَّهِ كَمَثَلِ ءَادَمَۖ خَلَقَهُۥ مِن تُرَابٍ ثُمَّ قَالَ لَهُۥ كُن فَيَكُونُ ﴿٥٩﴾

60. ಇದು ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಸತ್ಯವಾಗಿದೆ. ಆದ್ದರಿಂದ ನೀವು ಸಂಶಯಪಡುವವರಲ್ಲಿ ಸೇರಲೇಬೇಡಿ.

ٱلْحَقُّ مِن رَّبِّكَ فَلَا تَكُن مِّنَ ٱلْمُمْتَرِينَ ﴿٦٠﴾

61. ನಿಮ್ಮ ಬಳಿಗೆ ಜ್ಞಾನವು ಬಂದ ಬಳಿಕವೂ ಅವರ (ಈಸಾರ) ವಿಷಯದಲ್ಲಿ ಯಾರಾದರೂ ನಿಮ್ಮೊಂದಿಗೆ ತರ್ಕಿಸಿದರೆ ನೀವು ಹೇಳಿರಿ: "ಬನ್ನಿ! ನಾವು ನಮ್ಮ ಮಕ್ಕಳನ್ನು ಮತ್ತು ನಿಮ್ಮ ಮಕ್ಕಳನ್ನು, ನಮ್ಮ ಮಹಿಳೆಯರನ್ನು ಮತ್ತು ನಿಮ್ಮ ಮಹಿಳೆಯರನ್ನು, ನಮ್ಮನ್ನು ಮತ್ತು ನಿಮ್ಮನ್ನು (ಎಲ್ಲರನ್ನೂ) ಕರೆದು ಒಟ್ಟುಗೂಡೋಣ. ನಂತರ ಮನಸಾರೆ ಪ್ರಾರ್ಥಿಸಿ ಸುಳ್ಳು ಹೇಳುವವರ ಮೇಲೆ ಅಲ್ಲಾಹನ ಶಾಪವವಿರಲೆಂದು ಬೇಡಿಕೊಳ್ಳೋಣ."[1]

فَمَنْ حَآجَّكَ فِيهِ مِنۢ بَعْدِ مَا جَآءَكَ مِنَ ٱلْعِلْمِ فَقُلْ تَعَالَوْاْ نَدْعُ أَبْنَآءَنَا وَأَبْنَآءَكُمْ وَنِسَآءَنَا وَنِسَآءَكُمْ وَأَنفُسَنَا وَأَنفُسَكُمْ ثُمَّ نَبْتَهِلْ فَنَجْعَل لَّعْنَتَ ٱللَّهِ عَلَى ٱلْكَٰذِبِينَ ﴿٦١﴾

62. ನಿಶ್ಚಯವಾಗಿಯೂ ಇದು ಸತ್ಯ ನಿರೂಪಣೆಯಾಗಿದೆ. ಅಲ್ಲಾಹನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ನಿಶ್ಚಯವಾಗಿಯೂ ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

إِنَّ هَٰذَا لَهُوَ ٱلْقَصَصُ ٱلْحَقُّۚ وَمَا مِنْ إِلَٰهٍ إِلَّا ٱللَّهُۚ وَإِنَّ ٱللَّهَ لَهُوَ ٱلْعَزِيزُ ٱلْحَكِيمُ ﴿٦٢﴾

63. ಅದರ ಬಳಿಕವೂ ಅವರು ವಿಮುಖರಾದರೆ—ನಿಶ್ಚಯವಾಗಿಯೂ ಅಲ್ಲಾಹು ಕಿಡಿಗೇಡಿಗಳ ಬಗ್ಗೆ ತಿಳಿದವನಾಗಿದ್ದಾನೆ.

فَإِن تَوَلَّوْاْ فَإِنَّ ٱللَّهَ عَلِيمٌۢ بِٱلْمُفْسِدِينَ ﴿٦٣﴾

64. ಹೇಳಿರಿ: "ಓ ಗ್ರಂಥದವರೇ! ನಮ್ಮ ಮತ್ತು ನಿಮ್ಮ ನಡುವೆ ಸಮಾನವಾಗಿರುವ ವಚನದ ಕಡೆಗೆ ಬನ್ನಿರಿ. ಅಂದರೆ ನಾವು

قُلْ يَٰٓأَهْلَ ٱلْكِتَٰبِ تَعَالَوْاْ إِلَىٰ كَلِمَةٍ سَوَآءٍ بَيْنَنَا وَبَيْنَكُمْ أَلَّا نَعْبُدَ إِلَّا ٱللَّهَ وَلَا نُشْرِكَ

[1] ಈ ವಚನವನ್ನು ಆಯತುಲ್ ಮುಬಾಹಲ (ಶಾಪಪ್ರಾರ್ಥನೆಯ ವಚನ) ಎಂದು ಕರೆಯಲಾಗುತ್ತದೆ. ಎರಡು ಗುಂಪುಗಳ ನಡುವೆ ಭಿನ್ನಮತವಿರುವ ಒಂದು ವಿಷಯವು ಮಾತುಕತೆಯಿಂದ ಅಥವಾ ಇತರ ವಿಧಾನಗಳಿಂದ ಪರಿಹಾರವಾಗದೆ, ಎರಡು ಗುಂಪುಗಳೂ ನಾವೇ ಸತ್ಯದಲ್ಲಿರುವವರು ಎಂದು ಹಟ ಹಿಡಿದರೆ, ಆ ಎರಡು ಗುಂಪುಗಳು ಸೇರಿ ಅಸತ್ಯದಲ್ಲಿರುವ ಗುಂಪಿನ ಮೇಲೆ ಅಲ್ಲಾಹನ ಶಾಪವಿರಲಿ ಎಂದು ಅಲ್ಲಾಹನಲ್ಲಿ ಮನಸಾರೆ ಪ್ರಾರ್ಥಿಸುವುದನ್ನು ಶಾಪ ಪ್ರಾರ್ಥನೆ ಎನ್ನಲಾಗುತ್ತದೆ.

ಅಲ್ಲಾಹನ ಹೊರತು (ಇನ್ನಾರನ್ನೂ) ಆರಾಧಿಸದಿರೋಣ, ಅವನೊಂದಿಗೆ ಯಾರನ್ನೂ ಸಹಭಾಗಿಯನ್ನಾಗಿ ಮಾಡದಿರೋಣ ಮತ್ತು ನಮ್ಮಲ್ಲಿ ಒಬ್ಬರು ಇನ್ನೊಬ್ಬರನ್ನು ಅಲ್ಲಾಹನ ಹೊರತಾಗಿರುವ ಪರಿಪಾಲಕರನ್ನಾಗಿ ಮಾಡದಿರೋಣ." ಅದರ ಬಳಿಕವೂ ಅವರು ವಿಮುಖರಾದರೆ (ಅವರೊಡನೆ) ಹೇಳಿರಿ: "ನಾವು ಮುಸ್ಲಿಮರಾಗಿದ್ದೇವೆ ಎಂಬುದಕ್ಕೆ ನೀವು ಸಾಕ್ಷಿಗಳಾಗಿರಿ."

بِهِۦ شَيۡـٔٗا وَلَا يَتَّخِذَ بَعۡضُنَا بَعۡضًا أَرۡبَابٗا مِّن دُونِ ٱللَّهِۚ فَإِن تَوَلَّوۡاْ فَقُولُواْ ٱشۡهَدُواْ بِأَنَّا مُسۡلِمُونَ ٦٤

---

65. ಓ ಗ್ರಂಥದವರೇ! ನೀವು ಇಬ್ರಾಹೀಮರ ವಿಷಯದಲ್ಲಿ ಏಕೆ ತರ್ಕಿಸುತ್ತೀರಿ?[1] ತೌರಾತ್ ಮತ್ತು ಇಂಜೀಲ್ ಅವತೀರ್ಣವಾದದ್ದು ಅವರ ನಂತರವಲ್ಲವೇ! ನೀವು ಆಲೋಚಿಸುವುದಿಲ್ಲವೇ?

يَٰٓأَهۡلَ ٱلۡكِتَٰبِ لِمَ تُحَآجُّونَ فِيٓ إِبۡرَٰهِيمَ وَمَآ أُنزِلَتِ ٱلتَّوۡرَىٰةُ وَٱلۡإِنجِيلُ إِلَّا مِنۢ بَعۡدِهِۦٓۚ أَفَلَا تَعۡقِلُونَ ٦٥

---

66. ನಿಮಗೆ ಜ್ಞಾನವಿರುವ ವಿಷಯದಲ್ಲಿ ನೀವು ತರ್ಕಿಸಿದ್ದೀರಿ. ಆದರೆ ಈಗ ನಿಮಗೆ ಜ್ಞಾನವಿಲ್ಲದ ವಿಷಯದಲ್ಲಿ ನೀವೇಕೆ ತರ್ಕಿಸುತ್ತೀರಿ? ಅಲ್ಲಾಹು ತಿಳಿದಿದ್ದಾನೆ. ಆದರೆ ನೀವು ತಿಳಿದಿಲ್ಲ.

هَٰٓأَنتُمۡ هَٰٓؤُلَآءِ حَٰجَجۡتُمۡ فِيمَا لَكُم بِهِۦ عِلۡمٞ فَلِمَ تُحَآجُّونَ فِيمَا لَيۡسَ لَكُم بِهِۦ عِلۡمٞۚ وَٱللَّهُ يَعۡلَمُ وَأَنتُمۡ لَا تَعۡلَمُونَ ٦٦

---

67. ಇಬ್ರಾಹೀಮರು ಯಹೂದಿ ಅಥವಾ ಕ್ರಿಶ್ಚಿಯನ್ ಆಗಿರಲಿಲ್ಲ; ಆದರೆ ಅವರು ಏಕನಿಷ್ಠರು ಮತ್ತು ಮುಸ್ಲಿಮರಾಗಿದ್ದರು.[2] ಅವರು ಬಹುದೇವಾರಾಧಕರಲ್ಲಿ ಸೇರಿದವರಾಗಿರಲಿಲ್ಲ.

مَا كَانَ إِبۡرَٰهِيمُ يَهُودِيّٗا وَلَا نَصۡرَانِيّٗا وَلَٰكِن كَانَ حَنِيفٗا مُّسۡلِمٗا وَمَا كَانَ مِنَ ٱلۡمُشۡرِكِينَ ٦٧

---

68. ನಿಶ್ಚಯವಾಗಿಯೂ ಜನರಲ್ಲಿ ಇಬ್ರಾಹೀಮರಿಗೆ ಹೆಚ್ಚು ಆಪ್ತರು ಯಾರೆಂದರೆ ಅವರನ್ನು ಅನುಸರಿಸಿದವರು; ಮತ್ತು ಈ ಪ್ರವಾದಿ ಹಾಗೂ (ಈ ಪ್ರವಾದಿಯಲ್ಲಿ) ವಿಶ್ವಾಸವಿಟ್ಟವರು. ಅಲ್ಲಾಹು ಸತ್ಯವಿಶ್ವಾಸಿಗಳ ರಕ್ಷಕನಾಗಿದ್ದಾನೆ.

إِنَّ أَوۡلَى ٱلنَّاسِ بِإِبۡرَٰهِيمَ لَلَّذِينَ ٱتَّبَعُوهُ وَهَٰذَا ٱلنَّبِيُّ وَٱلَّذِينَ ءَامَنُواْۗ وَٱللَّهُ وَلِيُّ ٱلۡمُؤۡمِنِينَ ٦٨

---

69. ಗ್ರಂಥದವರ ಒಂದು ಪಂಗಡವು ನಿಮ್ಮನ್ನು ದಾರಿತಪ್ಪಿಸಲು ಬಯಸುತ್ತಿದೆ. ಆದರೆ (ವಾಸ್ತವವಾಗಿ) ಅವರು ಅವರನ್ನೇ ದಾರಿತಪ್ಪಿಸುತ್ತಿದ್ದಾರೆ. ಅವರು ಅದನ್ನು ತಿಳಿಯುವುದಿಲ್ಲ.

وَدَّت طَّآئِفَةٞ مِّنۡ أَهۡلِ ٱلۡكِتَٰبِ لَوۡ يُضِلُّونَكُمۡ وَمَا يُضِلُّونَ إِلَّآ أَنفُسَهُمۡ وَمَا يَشۡعُرُونَ ٦٩

---

70. ಓ ಗ್ರಂಥದವರೇ! ನೀವು ಸಾಕ್ಷಿಗಳಾಗಿದ್ದೂ ಕೂಡ ನೀವೇಕೆ ಅಲ್ಲಾಹನ ವಚನಗಳನ್ನು ನಿಷೇಧಿಸುತ್ತೀರಿ?

يَٰٓأَهۡلَ ٱلۡكِتَٰبِ لِمَ تَكۡفُرُونَ بِـَٔايَٰتِ ٱللَّهِ وَأَنتُمۡ تَشۡهَدُونَ ٧٠

---

71. ಓ ಗ್ರಂಥದವರೇ! ನೀವು ಸತ್ಯವನ್ನು ಅಸತ್ಯದೊಂದಿಗೆ ಏಕೆ

يَٰٓأَهۡلَ ٱلۡكِتَٰبِ لِمَ تَلۡبِسُونَ ٱلۡحَقَّ بِٱلۡبَٰطِلِ

---

[1] ಇಬ್ರಾಹೀಮ್ (ಅವರ ಮೇಲೆ ಶಾಂತಿಯಿರಲಿ) ಯಹೂದಿಯಾಗಿದ್ದರು ಎಂದು ಯಹೂದಿಗಳು ಹೇಳುತ್ತಿದ್ದರು ಮತ್ತು ಅವರು ಕ್ರೈಸ್ತರಾಗಿದ್ದರು ಎಂದು ಕ್ರೈಸ್ತರು ಹೇಳುತ್ತಿದ್ದರು. ವಾಸ್ತವವಾಗಿ ಯಹೂದಿಗಳು ನಂಬುವ ತೌರಾತ್ (ತೋರಾ) ಮತ್ತು ಕ್ರೈಸ್ತರು ನಂಬುವ ಇಂಜೀಲ್ (ಸುವಾರ್ತೆ) ಅವತೀರ್ಣವಾಗುವುದಕ್ಕೆ ಎಷ್ಟೋ ವರ್ಷಗಳ ಮೊದಲು ಇಬ್ರಾಹೀಮ್ (ಅವರ ಮೇಲೆ ಶಾಂತಿಯಿರಲಿ) ಜೀವಿಸಿದ್ದರು. ಹಾಗಿರುವಾಗ ಅವರು ಯಹೂದಿ ಅಥವಾ ಕ್ರೈಸ್ತರಾಗಲು ಹೇಗೆ ಸಾಧ್ಯ?

[2] ಮುಸ್ಲಿಮ್ ಎಂದರೆ ಅಲ್ಲಾಹನಿಗೆ ಸಂಪೂರ್ಣ ಶರಣಾದವನು. ಎಲ್ಲಾ ಪ್ರವಾದಿಗಳು ಮುಸ್ಲಿಮರಾಗಿದ್ದರು ಮತ್ತು ಅವರ ಧರ್ಮ ಇಸ್ಲಾಂ ಆಗಿತ್ತು.

ಬೆರೆಸುತ್ತೀರಿ ಮತ್ತು ತಿಳಿದೂ ಕೂಡ ಸತ್ಯವನ್ನೇಕೆ ಮುಚ್ಚಿಡುತ್ತೀರಿ?

وَتَكۡتُمُونَ ٱلۡحَقَّ وَأَنتُمۡ تَعۡلَمُونَ ٧١

---

72. ಗ್ರಂಥದವರ ಒಂದು ಪಂಗಡವು (ಪರಸ್ಪರ) ಹೇಳುತ್ತಾರೆ: "ಹಗಲಿನ ಆರಂಭದಲ್ಲಿ (ಬೆಳಗ್ಗೆ) ಸತ್ಯವಿಶ್ವಾಸಿಗಳಿಗೆ ಅವತೀರ್ಣವಾದ ಸಂದೇಶದಲ್ಲಿ ವಿಶ್ವಾಸವಿಡಿ ಮತ್ತು ಹಗಲಿನ ಕೊನೆಯಲ್ಲಿ (ಸಂಜೆಯಾಗುವಾಗ) ನಿಷೇಧಿಸಿ ಬಿಡಿ. ಆಗ ಅವರು ಮರಳಿಬರಲೂಬಹುದು."[1]

وَقَالَت طَّآئِفَةٞ مِّنۡ أَهۡلِ ٱلۡكِتَٰبِ ءَامِنُواْ بِٱلَّذِيٓ
أُنزِلَ عَلَى ٱلَّذِينَ ءَامَنُواْ وَجۡهَ ٱلنَّهَارِ وَٱكۡفُرُوٓاْ
ءَاخِرَهُۥ لَعَلَّهُمۡ يَرۡجِعُونَ ٧٢

---

73. (ಅವರು ಪರಸ್ಪರ ಹೇಳುತ್ತಾರೆ:) "ನಿಮ್ಮ ಧರ್ಮದ ಅನುಯಾಯಿಗಳನ್ನು ಬಿಟ್ಟು ಬೇರೆ ಯಾರನ್ನೂ ನೀವು ನಂಬಬೇಡಿ." ಹೇಳಿರಿ: "ನಿಶ್ಚಯವಾಗಿಯೂ ಅಲ್ಲಾಹನ ಮಾರ್ಗದರ್ಶನವೇ ನಿಜವಾದ ಮಾರ್ಗದರ್ಶನ." (ಅವರು ಪರಸ್ಪರ ಹೇಳುತ್ತಾರೆ): "ನಿಮಗೆ ನೀಡಲಾದಂತಹ (ಗ್ರಂಥವನ್ನು) ಬೇರೆ ಯಾರಿಗಾದರೂ ನೀಡಲಾಗಬಹುದು; ಅಥವಾ ಅವರು ನಿಮ್ಮ ಪರಿಪಾಲಕನ (ಅಲ್ಲಾಹನ) ಬಳಿ ನಿಮ್ಮೊಡನೆ ತರ್ಕಿಸುವರು ಎಂದು (ನೀವು ನಂಬಲೇಬೇಡಿ)." ಹೇಳಿರಿ: "ನಿಶ್ಚಯವಾಗಿಯೂ ಔದಾರ್ಯವಿರುವುದು ಅಲ್ಲಾಹನ ಕೈಯಲ್ಲಿ. ಅವನು ಇಚ್ಛಿಸುವವರಿಗೆ ಅವನು ಅದನ್ನು ದಯಪಾಲಿಸುತ್ತಾನೆ. ಅಲ್ಲಾಹು ವಿಶಾಲನು ಮತ್ತು ಸರ್ವಜ್ಞನಾಗಿದ್ದಾನೆ."

وَلَا تُؤۡمِنُوٓاْ إِلَّا لِمَن تَبِعَ دِينَكُمۡ قُلۡ إِنَّ
ٱلۡهُدَىٰ هُدَى ٱللَّهِ أَن يُؤۡتَىٰٓ أَحَدٞ مِّثۡلَ مَآ
أُوتِيتُمۡ أَوۡ يُحَآجُّوكُمۡ عِندَ رَبِّكُمۡۗ قُلۡ إِنَّ
ٱلۡفَضۡلَ بِيَدِ ٱللَّهِ يُؤۡتِيهِ مَن يَشَآءُۗ وَٱللَّهُ وَٰسِعٌ
عَلِيمٞ ٧٣

---

74. ಅವನು ತನ್ನ ದಯೆಯಿಂದ ಅವನು ಇಚ್ಛಿಸುವವರನ್ನು ವಿಶೇಷವಾಗಿ ಅನುಗ್ರಹಿಸುತ್ತಾನೆ. ಅಲ್ಲಾಹು ಮಹಾ ಔದಾರ್ಯದ ಒಡೆಯನಾಗಿದ್ದಾನೆ.

يَخۡتَصُّ بِرَحۡمَتِهِۦ مَن يَشَآءُۗ وَٱللَّهُ ذُو ٱلۡفَضۡلِ
ٱلۡعَظِيمِ ٧٤

---

75. ಗ್ರಂಥದವರಲ್ಲಿ ಕೆಲವರಿದ್ದಾರೆ. ನೀವು ಅವರ ಮೇಲೆ ನಂಬಿಕೆಯಿಟ್ಟು ಬಂಗಾರದ ರಾಶಿಯನ್ನು ತೆಗೆದಿಡಲು ಕೊಟ್ಟರೂ (ನೀವು ಕೇಳುವಾಗ) ಅವರು ಅದನ್ನು ನಿಮಗೆ ಹಿಂದಿರುಗಿಸುತ್ತಾರೆ. ಆದರೆ ಅವರಲ್ಲಿ ಬೇರೆ ಕೆಲವರಿದ್ದಾರೆ. ನೀವು ಅವರ ಮೇಲೆ ನಂಬಿಕೆಯಿಟ್ಟು ಒಂದು ಬಂಗಾರದ ನಾಣ್ಯವನ್ನು ತೆಗೆದಿಡಲು ಕೊಟ್ಟರೆ, ಪದೇ ಪದೇ ಕೇಳದೆ ಅವರು ಅದನ್ನು ನಿಮಗೆ ಹಿಂದಿರುಗಿಸುವುದಿಲ್ಲ. ಅದೇಕೆಂದರೆ ಅವರು ಹೇಳುತ್ತಾರೆ: "ಆ ಅನಕ್ಷರಸ್ಥರಿಗೆ (ಯಹೂದಿಗಳಲ್ಲದವರಿಗೆ) ಸಂಬಂಧಿಸಿದ

وَمِنۡ أَهۡلِ ٱلۡكِتَٰبِ مَنۡ إِن تَأۡمَنۡهُ بِقِنطَارٖ
يُؤَدِّهِۦٓ إِلَيۡكَ وَمِنۡهُم مَّنۡ إِن تَأۡمَنۡهُ بِدِينَارٖ لَّا
يُؤَدِّهِۦٓ إِلَيۡكَ إِلَّا مَا دُمۡتَ عَلَيۡهِ قَآئِمٗاۗ ذَٰلِكَ
بِأَنَّهُمۡ قَالُواْ لَيۡسَ عَلَيۡنَا فِي ٱلۡأُمِّيِّـۧنَ سَبِيلٞ
وَيَقُولُونَ عَلَى ٱللَّهِ ٱلۡكَذِبَ وَهُمۡ يَعۡلَمُونَ ٧٥

---

[1] ಇದು ಯಹೂದಿಗಳ ಒಂದು ಕುತಂತ್ರ. ಇದರಿಂದ ಅವರು ಮುಸಲ್ಮಾನರನ್ನು ದಾರಿತಪ್ಪಿಸಲು ಬಯಸುತ್ತಿದ್ದರು. ಅವರಲ್ಲೊಬ್ಬರು ಬೆಳಗ್ಗೆ ಇಸ್ಲಾಂ ಸ್ವೀಕರಿಸಿ ಮುಸಲ್ಮಾನರಾಗುತ್ತಿದ್ದರು. ಆದರೆ ಸಂಜೆಯಾಗುತ್ತಿದ್ದಂತೆ ಪುನಃ ಯಹೂದಿ ಧರ್ಮಕ್ಕೆ ಮರಳುತ್ತಿದ್ದರು. ಬೆಳಗ್ಗೆ ಮುಸಲ್ಮಾನ-ರಾದವರು ಸಂಜೆ ಇಸ್ಲಾಂನಿಂದ ಹೊರಹೋಗಬೇಕಾದರೆ ಇಸ್ಲಾಂ ಧರ್ಮದಲ್ಲಿ ನಾವು ತಿಳಿಯದ ಏನೋ ಕೊರತೆಯಿದೆ ಎಂದು ಮುಸಲ್ಮಾನರು ಭಾವಿಸುವಂತಾಗಲು ಅವರು ಹೀಗೆ ಮಾಡುತ್ತಿದ್ದರು.

ಯಾವುದೇ ವಿಷಯದಲ್ಲೂ ನಮಗೆ ಶಿಕ್ಷೆಯಿಲ್ಲ." ಅವರು ತಿಳಿದೂ ಸಹ ಅಲ್ಲಾಹನ ಹೆಸರಲ್ಲಿ ಸುಳ್ಳು ಹೇಳುತ್ತಾರೆ.

---

بَلَىٰ مَنْ أَوْفَىٰ بِعَهْدِهِۦ وَٱتَّقَىٰ فَإِنَّ ٱللَّهَ يُحِبُّ ٱلْمُتَّقِينَ ﴿٧٦﴾

76. ಹೌದು (ಅವರಿಗೆ ಶಿಕ್ಷೆಯಿದೆ). ಯಾರು ತನ್ನ ಕರಾರನ್ನು ನೆರವೇರಿಸುತ್ತಾರೋ ಮತ್ತು ಅಲ್ಲಾಹನನ್ನು ಭಯಪಡುತ್ತಾರೋ—ನಿಶ್ಚಯವಾಗಿಯೂ ಅಲ್ಲಾಹು ದೇವಭಯವುಳ್ಳವರನ್ನು ಪ್ರೀತಿಸುತ್ತಾನೆ.

---

إِنَّ ٱلَّذِينَ يَشْتَرُونَ بِعَهْدِ ٱللَّهِ وَأَيْمَـٰنِهِمْ ثَمَنًا قَلِيلًا أُو۟لَـٰٓئِكَ لَا خَلَـٰقَ لَهُمْ فِى ٱلْـَٔاخِرَةِ وَلَا يُكَلِّمُهُمُ ٱللَّهُ وَلَا يَنظُرُ إِلَيْهِمْ يَوْمَ ٱلْقِيَـٰمَةِ وَلَا يُزَكِّيهِمْ وَلَهُمْ عَذَابٌ أَلِيمٌ ﴿٧٧﴾

77. ನಿಶ್ಚಯವಾಗಿಯೂ ಅಲ್ಲಾಹನ ಕರಾರನ್ನು ಮತ್ತು ತಮ್ಮ ಆಣೆಗಳನ್ನು ಕೀಳು ದರಕ್ಕೆ ಮಾರಾಟ ಮಾಡುವವರು ಯಾರೋ—ಅವರಿಗೆ ಪರಲೋಕದಲ್ಲಿ ಯಾವುದೇ ಪಾಲಿಲ್ಲ. ಪುನರುತ್ಥಾನ ದಿನದಂದು ಅಲ್ಲಾಹು ಅವರೊಡನೆ ಮಾತನಾಡುವುದಿಲ್ಲ, ಅವರ ಕಡೆಗೆ ದೃಷ್ಟಿ ಬೀರುವುದಿಲ್ಲ ಮತ್ತು ಅವರನ್ನು ಶುದ್ಧೀಕರಿಸುವುದಿಲ್ಲ. ಅವರಿಗೆ ಯಾತನಾಮಯ ಶಿಕ್ಷೆಯಿದೆ.

---

وَإِنَّ مِنْهُمْ لَفَرِيقًا يَلْوُۥنَ أَلْسِنَتَهُم بِٱلْكِتَـٰبِ لِتَحْسَبُوهُ مِنَ ٱلْكِتَـٰبِ وَمَا هُوَ مِنَ ٱلْكِتَـٰبِ وَيَقُولُونَ هُوَ مِنْ عِندِ ٱللَّهِ وَمَا هُوَ مِنْ عِندِ ٱللَّهِ وَيَقُولُونَ عَلَى ٱللَّهِ ٱلْكَذِبَ وَهُمْ يَعْلَمُونَ ﴿٧٨﴾

78. ನಿಶ್ಚಯವಾಗಿಯೂ ಅವರಲ್ಲೊಂದು ಪಂಗಡವು ಗ್ರಂಥವನ್ನು ಪಠಿಸುವಾಗ ತಮ್ಮ ನಾಲಗೆಯನ್ನು ತಿರುಚುತ್ತಾರೆ. ಅದು ಗ್ರಂಥದ ಭಾಗವೆಂದು ನೀವು ಭಾವಿಸುವುದಕ್ಕಾಗಿ. ಆದರೆ ಅದು ಗ್ರಂಥದ ಭಾಗವಲ್ಲ. ಅವರು ಹೇಳುತ್ತಾರೆ: "ಅದು ಅಲ್ಲಾಹನ ಕಡೆಯಿಂದ ಬಂದಿದೆ." ಆದರೆ ಅದು ಅಲ್ಲಾಹನ ಕಡೆಯಿಂದ ಬಂದಿಲ್ಲ. ಅವರು ತಿಳಿದೂ ಸಹ ಅಲ್ಲಾಹನ ಹೆಸರಲ್ಲಿ ಸುಳ್ಳು ಹೇಳುತ್ತಾರೆ.[1]

---

مَا كَانَ لِبَشَرٍ أَن يُؤْتِيَهُ ٱللَّهُ ٱلْكِتَـٰبَ وَٱلْحُكْمَ وَٱلنُّبُوَّةَ ثُمَّ يَقُولَ لِلنَّاسِ كُونُوا۟ عِبَادًا لِّى مِن دُونِ ٱللَّهِ وَلَـٰكِن كُونُوا۟ رَبَّـٰنِيِّـۧنَ بِمَا كُنتُمْ تُعَلِّمُونَ ٱلْكِتَـٰبَ وَبِمَا كُنتُمْ تَدْرُسُونَ ﴿٧٩﴾

79. ಅಲ್ಲಾಹು ಒಬ್ಬ ಮನುಷ್ಯನಿಗೆ (ಪ್ರವಾದಿಗೆ) ಗ್ರಂಥ, ವಿವೇಕ ಮತ್ತು ಪ್ರವಾದಿತ್ವವನ್ನು ನೀಡಿ, ನಂತರ ಅವರು ಜನರೊಡನೆ, "ನೀವು ಅಲ್ಲಾಹನನ್ನು ಬಿಟ್ಟು ನನ್ನ ದಾಸರಾಗಿರಿ" ಎಂದು ಹೇಳುವುದು ಉಂಟಾಗಲಾರದು. ಬದಲಿಗೆ, (ಅವರು ಹೇಳುವುದೇನೆಂದರೆ): "ನೀವು ಗ್ರಂಥವನ್ನು ಕಲಿಸುತ್ತಿರುವುದರಿಂದ ಮತ್ತು ನೀವು ಸ್ವತಃ ಅದನ್ನು ಕಲಿಯುತ್ತಿರುವುದರಿಂದ ನೀವು ಅಲ್ಲಾಹನ ದಾಸರಾಗಿರಿ."

---

وَلَا يَأْمُرَكُمْ أَن تَتَّخِذُوا۟ ٱلْمَلَـٰٓئِكَةَ وَٱلنَّبِيِّـۧنَ أَرْبَابًا ۗ أَيَأْمُرُكُم بِٱلْكُفْرِ بَعْدَ إِذْ أَنتُم مُّسْلِمُونَ ﴿٨٠﴾

80. ನೀವು ದೇವದೂತರುಗಳನ್ನು ಮತ್ತು ಪ್ರವಾದಿಗಳನ್ನು ದೇವರುಗಳನ್ನಾಗಿ ಮಾಡಿಕೊಳ್ಳಿರಿ ಎಂದು ಅವರು (ಪ್ರವಾದಿ) ನಿಮಗೆ ಆದೇಶಿಸುವುದಿಲ್ಲ. ನೀವು ಮುಸ್ಲಿಮರಾದ ಬಳಿಕ ಅವರು

---

[1] ಯಹೂದಿಗಳು ಅವರ ಧರ್ಮಗ್ರಂಥವನ್ನು ತಿದ್ದುಪಡಿ ಮಾಡಿದ್ದು ಮಾತ್ರವಲ್ಲದೆ, ಜನಸಾಮಾನ್ಯರ ಮುಂದೆ ಅದನ್ನು ಪಠಿಸುವಾಗ ತಮ್ಮ ನಾಲಗೆಯನ್ನು ತಿರುಚಿ ಜನರು ಬೇರೆ ಅರ್ಥವನ್ನು ಭಾವಿಸುವಂತೆ ಮಾಡುತ್ತಿದ್ದರು. ಅದೇ ರೀತಿ ಅವರು ತಮ್ಮ ಕೆಲವು ಮಾತುಗಳನ್ನು ಅಲ್ಲಾಹನ ವಚನಗಳೆಂದು ಸುಳ್ಳು ಹೇಳುತ್ತಿದ್ದರು.

ನಿಮಗೆ ಸತ್ಯನಿಷೇಧಿಗಳಾಗಲು ಆದೇಶಿಸುವರೇ?

81. ಅಲ್ಲಾಹು ಪ್ರವಾದಿಗಳಿಂದ ಕರಾರನ್ನು ಪಡೆದ ಸಂದರ್ಭ: "ನಾನು ನಿಮಗೆ ಗ್ರಂಥ ಮತ್ತು ವಿವೇಕವನ್ನು ನೀಡಿ, ನಂತರ ನಿಮ್ಮ ಬಳಿಯಿರುವುದನ್ನು ದೃಢೀಕರಿಸುವ ಒಬ್ಬ ಸಂದೇಶವಾಹಕರು ನಿಮ್ಮ ಬಳಿಗೆ ಬಂದರೆ, ನೀವು ಅವರಲ್ಲಿ ವಿಶ್ವಾಸವಿಡಲೇಬೇಕು ಮತ್ತು ಅವರಿಗೆ ಸಹಾಯ ಮಾಡಲೇಬೇಕು." ಅಲ್ಲಾಹು ಕೇಳಿದನು: "ಇದನ್ನು ಒಪ್ಪಿಕೊಂಡು ಈ ವಿಷಯದಲ್ಲಿ ನನ್ನ ಹೊಣೆಗಾರಿಕೆಯನ್ನು ನಿಭಾಯಿಸುವಿರಾ?" ಅವರು ಉತ್ತರಿಸಿದರು: "ನಾವು ಒಪ್ಪಿಕೊಂಡಿದ್ದೇವೆ." ಅಲ್ಲಾಹು ಹೇಳಿದನು: "ಹಾಗಾದರೆ ನೀವು ಅದಕ್ಕೆ ಸಾಕ್ಷಿಗಳಾಗಿರಿ. ನಾನೂ ನಿಮ್ಮೊಂದಿಗೆ ಸಾಕ್ಷಿಯಾಗಿರುವೆನು."[1]

وَإِذۡ أَخَذَ ٱللَّهُ مِيثَٰقَ ٱلنَّبِيِّـۧنَ لَمَآ ءَاتَيۡتُكُم مِّن كِتَٰبٖ وَحِكۡمَةٖ ثُمَّ جَآءَكُمۡ رَسُولٞ مُّصَدِّقٞ لِّمَا مَعَكُمۡ لَتُؤۡمِنُنَّ بِهِۦ وَلَتَنصُرُنَّهُۥۚ قَالَ ءَأَقۡرَرۡتُمۡ وَأَخَذۡتُمۡ عَلَىٰ ذَٰلِكُمۡ إِصۡرِيۖ قَالُوٓاْ أَقۡرَرۡنَاۚ قَالَ فَٱشۡهَدُواْ وَأَنَا۠ مَعَكُم مِّنَ ٱلشَّٰهِدِينَ ٨١

82. ಅದರ ನಂತರವೂ ಯಾರಾದರೂ ವಿಮುಖರಾದರೆ ಅವರೇ ದುಷ್ಕರ್ಮಿಗಳು.

فَمَن تَوَلَّىٰ بَعۡدَ ذَٰلِكَ فَأُوْلَٰٓئِكَ هُمُ ٱلۡفَٰسِقُونَ ٨٢

83. ಅವರು ಅಲ್ಲಾಹನದ್ದಲ್ಲದ ಬೇರೆ ಧರ್ಮವನ್ನು ಹುಡುಕುತ್ತಿದ್ದಾರೆಯೇ? (ವಾಸ್ತವವಾಗಿ) ಭೂಮ್ಯಾಕಾಶಗಳಲ್ಲಿರುವ ಎಲ್ಲರೂ ಸ್ವಯಂಪ್ರೇರಿತವಾಗಿ ಅಥವಾ ಬಲವಂತವಾಗಿ ಅವನಿಗೆ ಶರಣಾಗಿದ್ದಾರೆ. ಅವರೆಲ್ಲರೂ ಅವನ ಬಳಿಗೇ ಮರಳಿಹೋಗುವರು.

أَفَغَيۡرَ دِينِ ٱللَّهِ يَبۡغُونَ وَلَهُۥٓ أَسۡلَمَ مَن فِي ٱلسَّمَٰوَٰتِ وَٱلۡأَرۡضِ طَوۡعٗا وَكَرۡهٗا وَإِلَيۡهِ يُرۡجَعُونَ ٨٣

84. ಹೇಳಿರಿ: "ನಾವು ಅಲ್ಲಾಹನಲ್ಲಿ, ನಮಗೆ ಅವತೀರ್ಣವಾಗಿರುವುದರಲ್ಲಿ, ಇಬ್ರಾಹೀಮರಿಗೆ, ಇಸ್ಮಾಈಲರಿಗೆ, ಇಸ್‌ಹಾಕರಿಗೆ, ಯಾಕೂಬರಿಗೆ ಮತ್ತು ಯಾಕೂಬರ ಸಂತಾನಕ್ಕೆ ಅವತೀರ್ಣವಾಗಿರುವುದರಲ್ಲಿ, ಮೂಸಾ ಮತ್ತು ಈಸಾರಿಗೆ ನೀಡಲಾಗಿರುವುದರಲ್ಲಿ, ಎಲ್ಲಾ ಪ್ರವಾದಿಗಳಿಗೂ ಅವರ ಪರಿಪಾಲಕನ ಕಡೆಯಿಂದ ನೀಡಲಾಗಿರುವುದರಲ್ಲಿ ವಿಶ್ವಾಸವಿಟ್ಟಿದ್ದೇವೆ. ಅವರಲ್ಲಿ ಯಾರ ನಡುವೆಯೂ ನಾವು ಬೇಧ ಮಾಡುವುದಿಲ್ಲ. ನಾವು ಅಲ್ಲಾಹನಿಗೆ ಸಂಪೂರ್ಣ ಶರಣಾಗಿದ್ದೇವೆ."

قُلۡ ءَامَنَّا بِٱللَّهِ وَمَآ أُنزِلَ عَلَيۡنَا وَمَآ أُنزِلَ عَلَىٰٓ إِبۡرَٰهِيمَ وَإِسۡمَٰعِيلَ وَإِسۡحَٰقَ وَيَعۡقُوبَ وَٱلۡأَسۡبَاطِ وَمَآ أُوتِيَ مُوسَىٰ وَعِيسَىٰ وَٱلنَّبِيُّونَ مِن رَّبِّهِمۡ لَا نُفَرِّقُ بَيۡنَ أَحَدٖ مِّنۡهُمۡ وَنَحۡنُ لَهُۥ مُسۡلِمُونَ ٨٤

[1] ಅಲ್ಲಾಹು ಪ್ರತಿಯೊಬ್ಬ ಪ್ರವಾದಿಯಿಂದಲೂ ಈ ಕರಾರನ್ನು ಪಡೆದಿದ್ದನು. ಈ ಕರಾರಿನ ಪ್ರಕಾರ ಒಬ್ಬ ಪ್ರವಾದಿ ಅಸ್ತಿತ್ವದಲ್ಲಿರುವಾಗ, ಅಥವಾ ಅವರ ಬೋಧನೆಯು ಅಸ್ತಿತ್ವದಲ್ಲಿರುವಾಗ, ಹೊಸ ಪ್ರವಾದಿಯ ಆಗಮನವಾದರೆ ಆ ಪ್ರವಾದಿ ತನ್ನ ಬೋಧನೆಯನ್ನು ನಿಲ್ಲಿಸಿ ಆ ಹೊಸ ಪ್ರವಾದಿಯನ್ನು ಅನುಸರಿಸಬೇಕು. ಒಬ್ಬ ಪ್ರವಾದಿಗೆ ತನ್ನ ನಂತರ ಬರುವ ಹೊಸ ಪ್ರವಾದಿಯನ್ನು ಅನುಸರಿಸುವುದು ಕಡ್ಡಾಯವಾದರೆ ಅವರ ಅನುಯಾಯಿಗಳಿಗೂ ಅದು ಕಡ್ಡಾಯವಾಗಿದೆಯೆಂದು ಬೇರೆಯೇ ಹೇಳಬೇಕಾಗಿಲ್ಲ. ಆದ್ದರಿಂದ ಪ್ರವಾದಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರ ಆಗಮನದ ನಂತರ ಹಿಂದಿನ ಪ್ರವಾದಿಗಳ ಬೋಧನೆಗಳೆಲ್ಲವೂ ಅನೂರ್ಜಿತವಾಗುತ್ತವೆ ಮತ್ತು ಆ ಎಲ್ಲಾ ಪ್ರವಾದಿಗಳು ಮತ್ತು ಅವರ ಅನುಯಾಯಿಗಳು ಪ್ರವಾದಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರ ಬೋಧನೆಗಳನ್ನು ಅನುಸರಿಸಬೇಕಾಗುತ್ತದೆ.

85. ಯಾರು ಇಸ್ಲಾಂ ಅಲ್ಲದ ಬೇರೊಂದು ಧರ್ಮವನ್ನು ಹುಡುಕುತ್ತಾನೋ—ಅವನಿಂದ ಅದನ್ನು ಎಂದಿಗೂ ಸ್ವೀಕರಿಸಲಾಗುವುದಿಲ್ಲ. ಪರಲೋಕದಲ್ಲಿ ಅವನು ನಷ್ಟ ಹೊಂದಿದವರಲ್ಲಿ ಸೇರುವನು.

وَمَن يَبْتَغِ غَيْرَ ٱلْإِسْلَٰمِ دِينًا فَلَن يُقْبَلَ مِنْهُ وَهُوَ فِى ٱلْءَاخِرَةِ مِنَ ٱلْخَٰسِرِينَ ٨٥

86. ಸತ್ಯವಿಶ್ವಾಸವನ್ನು ಸ್ವೀಕರಿಸಿ, ಸಂದೇಶವಾಹಕರನ್ನು ಸತ್ಯವೆಂದು ಸಾಕ್ಷ್ಯವಹಿಸಿ, ನಂತರ ತಮ್ಮ ಬಳಿಗೆ ಸ್ಪಷ್ಟ ಸಾಕ್ಷ್ಯಾಧಾರಗಳು ಬಂದ ಬಳಿಕವೂ ಸತ್ಯನಿಷೇಧಿಗಳಾದ ಜನರಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಾದರೂ ಹೇಗೆ? ಅಕ್ರಮವೆಸಗುವ ಜನರಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ.

كَيْفَ يَهْدِى ٱللَّهُ قَوْمًا كَفَرُوا۟ بَعْدَ إِيمَٰنِهِمْ وَشَهِدُوٓا۟ أَنَّ ٱلرَّسُولَ حَقٌّ وَجَآءَهُمُ ٱلْبَيِّنَٰتُ ۚ وَٱللَّهُ لَا يَهْدِى ٱلْقَوْمَ ٱلظَّٰلِمِينَ ٨٦

87. ಅವರ ಮೇಲೆ ಅಲ್ಲಾಹನ, ದೇವದೂತರ ಮತ್ತು ಜನರೆಲ್ಲರ ಶಾಪವಿರುವುದೇ ಅವರಿಗಿರುವ ಪ್ರತಿಫಲವಾಗಿದೆ.

أُو۟لَٰٓئِكَ جَزَآؤُهُمْ أَنَّ عَلَيْهِمْ لَعْنَةَ ٱللَّهِ وَٱلْمَلَٰٓئِكَةِ وَٱلنَّاسِ أَجْمَعِينَ ٨٧

88. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅವರಿಗೆ ಶಿಕ್ಷೆಯಲ್ಲಿ ರಿಯಾಯಿತಿಯಿಲ್ಲ ಮತ್ತು ಅವರಿಗೆ ವಿರಾಮವನ್ನೂ ನೀಡಲಾಗುವುದಿಲ್ಲ.

خَٰلِدِينَ فِيهَا لَا يُخَفَّفُ عَنْهُمُ ٱلْعَذَابُ وَلَا هُمْ يُنظَرُونَ ٨٨

89. ಆದರೆ ಯಾರು ಅದರ ಬಳಿಕ ಪಶ್ಚಾತ್ತಾಪಪಟ್ಟು, ಸ್ವಯಂ ತಿದ್ದಿಕೊಳ್ಳುತ್ತಾರೋ—ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

إِلَّا ٱلَّذِينَ تَابُوا۟ مِنۢ بَعْدِ ذَٰلِكَ وَأَصْلَحُوا۟ فَإِنَّ ٱللَّهَ غَفُورٌ رَّحِيمٌ ٨٩

90. ನಿಶ್ಚಯವಾಗಿಯೂ ಸತ್ಯವಿಶ್ವಾಸಿಗಳಾದ ಬಳಿಕ ಸತ್ಯನಿಷೇಧಿಗಳಾದವರು ಮತ್ತು ತಮ್ಮ ಸತ್ಯನಿಷೇಧವನ್ನು ಹೆಚ್ಚಿಸುತ್ತಲೇ ಇರುವವರು ಯಾರೋ—ಅವರ ಪಶ್ಚಾತ್ತಾಪವು ಎಂದಿಗೂ ಸ್ವೀಕಾರವಾಗುವುದಿಲ್ಲ. ಅವರೇ ದಾರಿತಪ್ಪಿದವರು.

إِنَّ ٱلَّذِينَ كَفَرُوا۟ بَعْدَ إِيمَٰنِهِمْ ثُمَّ ٱزْدَادُوا۟ كُفْرًا لَّن تُقْبَلَ تَوْبَتُهُمْ وَأُو۟لَٰٓئِكَ هُمُ ٱلضَّآلُّونَ ٩٠

91. ಸತ್ಯನಿಷೇಧಿಗಳು ಮತ್ತು ಸತ್ಯನಿಷೇಧಿಗಳಾಗಿಯೇ ಸಾಯುವವರು ಯಾರೋ—ಅವರಲ್ಲೊಬ್ಬನು ಭೂಮಿ ತುಂಬಾ ಬಂಗಾರವನ್ನು ಪರಿಹಾರವಾಗಿ ನೀಡಿದರೂ ಸಹ ಅವನಿಂದ ಅದನ್ನು ಎಂದಿಗೂ ಸ್ವೀಕರಿಸಲಾಗುವುದಿಲ್ಲ. ಅವರಿಗೆ ಯಾತನಾಮಯ ಶಿಕ್ಷೆಯಿದೆ. ಅವರಿಗೆ ಯಾವುದೇ ಸಹಾಯಕರಿಲ್ಲ.

إِنَّ ٱلَّذِينَ كَفَرُوا۟ وَمَاتُوا۟ وَهُمْ كُفَّارٌ فَلَن يُقْبَلَ مِنْ أَحَدِهِم مِّلْءُ ٱلْأَرْضِ ذَهَبًا وَلَوِ ٱفْتَدَىٰ بِهِۦٓ ۗ أُو۟لَٰٓئِكَ لَهُمْ عَذَابٌ أَلِيمٌ وَمَا لَهُم مِّن نَّٰصِرِينَ ٩١

92. ನೀವು ಇಷ್ಟಪಡುವ ವಸ್ತುಗಳಿಂದ ಅಲ್ಲಾಹನ ಮಾರ್ಗದಲ್ಲಿ ಖರ್ಚು ಮಾಡುವ ತನಕ ನೀವೆಂದೂ ಒಳಿತನ್ನು ಗಳಿಸುವುದಿಲ್ಲ. ನೀವು ಯಾವುದೇ ವಸ್ತುವನ್ನು ಖರ್ಚು (ದಾನ) ಮಾಡಿದರೂ ನಿಶ್ಚಯವಾಗಿಯೂ ಅಲ್ಲಾಹು ಅದನ್ನು ತಿಳಿಯುತ್ತಾನೆ.

لَن تَنَالُوا۟ ٱلْبِرَّ حَتَّىٰ تُنفِقُوا۟ مِمَّا تُحِبُّونَ ۚ وَمَا تُنفِقُوا۟ مِن شَىْءٍ فَإِنَّ ٱللَّهَ بِهِۦ عَلِيمٌ ٩٢

93. ಇಸ್ರಾಯೇಲ್ ಮಕ್ಕಳಿಗೆ ಎಲ್ಲಾ ಆಹಾರಗಳೂ ಧರ್ಮಸಮ್ಮತವಾಗಿದ್ದವು—ತೌರಾತ್ ಅವತೀರ್ಣವಾಗುವ ಮುನ್ನ ಇಸ್ರಾಈಲರು (ಯಾಕೂಬರು) ಸ್ವಯಂ ನಿಷೇಧಿಸಿದವುಗಳ ಹೊರತು. ಹೇಳಿರಿ: "ನೀವು ತೌರಾತನ್ನು ತಂದು ಅದನ್ನು ಪಠಿಸಿರಿ; ನೀವು ಸತ್ಯವಂತರಾಗಿದ್ದರೆ."

كُلُّ ٱلطَّعَامِ كَانَ حِلًّا لِّبَنِىٓ إِسْرَٰٓءِيلَ إِلَّا مَا حَرَّمَ إِسْرَٰٓءِيلُ عَلَىٰ نَفْسِهِۦ مِن قَبْلِ أَن تُنَزَّلَ ٱلتَّوْرَىٰةُ ۗ قُلْ فَأْتُوا۟ بِٱلتَّوْرَىٰةِ فَٱتْلُوهَآ إِن كُنتُمْ صَٰدِقِينَ ﴿٩٣﴾

94. ಅದರ ಬಳಿಕವೂ ಯಾರು ಅಲ್ಲಾಹನ ಮೇಲೆ ಸುಳ್ಳು ಆರೋಪಿಸುತ್ತಾರೋ—ಅವರೇ ಅಕ್ರಮಿಗಳು.

فَمَنِ ٱفْتَرَىٰ عَلَى ٱللَّهِ ٱلْكَذِبَ مِنۢ بَعْدِ ذَٰلِكَ فَأُو۟لَٰٓئِكَ هُمُ ٱلظَّٰلِمُونَ ﴿٩٤﴾

95. ಹೇಳಿರಿ: "ಅಲ್ಲಾಹು ಸತ್ಯವನ್ನೇ ಹೇಳಿದ್ದಾನೆ. ಆದ್ದರಿಂದ, ನೀವು ಏಕನಿಷ್ಠರಾದ ಇಬ್ರಾಹೀಮರ ಮಾರ್ಗವನ್ನು ಹಿಂಬಾಲಿಸಿರಿ. ಅವರು ಬಹುದೇವಾರಾಧಕರಲ್ಲಿ ಸೇರಿದವರಾಗಿರಲಿಲ್ಲ."

قُلْ صَدَقَ ٱللَّهُ ۗ فَٱتَّبِعُوا۟ مِلَّةَ إِبْرَٰهِيمَ حَنِيفًا ۖ وَمَا كَانَ مِنَ ٱلْمُشْرِكِينَ ﴿٩٥﴾

96. ನಿಶ್ಚಯವಾಗಿಯೂ ಮಕ್ಕಾದಲ್ಲಿರುವ ಭವನವು ಮನುಷ್ಯರಿಗಾಗಿ ಸ್ಥಾಪಿಸಲಾದ ಮೊಟ್ಟಮೊದಲ ಆರಾಧನಾಲಯವಾಗಿದೆ. ಅದು ಸಮೃದ್ಧವೂ ಸರ್ವಲೋಕದವರಿಗೆ ಮಾರ್ಗದರ್ಶಿಯೂ ಆಗಿದೆ.

إِنَّ أَوَّلَ بَيْتٍ وُضِعَ لِلنَّاسِ لَلَّذِى بِبَكَّةَ مُبَارَكًا وَهُدًى لِّلْعَٰلَمِينَ ﴿٩٦﴾

97. ಅದರಲ್ಲಿ ಸ್ಪಷ್ಟವಾದ ದೃಷ್ಟಾಂತಗಳಿವೆ. (ಅದರಲ್ಲಿ) ಇಬ್ರಾಹೀಮರು ನಿಂತ ಸ್ಥಳವಿದೆ. ಅದನ್ನು ಪ್ರವೇಶಿಸಿದವನು ನಿರ್ಭಯನಾಗುತ್ತಾನೆ. ಆ ಭವನಕ್ಕೆ ತಲುಪಲು ಸಾಧ್ಯವಿರುವ ಜನರು ಅಲ್ಲಿಗೆ ತೆರಳಿ ಹಜ್ಜ್ ನಿರ್ವಹಿಸುವುದನ್ನು ಅಲ್ಲಾಹು ಕಡ್ಡಾಯಗೊಳಿಸಿದ್ದಾನೆ. ಆದರೆ ಯಾರಾದರೂ ಅದನ್ನು ನಿಷೇಧಿಸಿದರೆ—ನಿಶ್ಚಯವಾಗಿಯೂ ಅಲ್ಲಾಹು ಸರ್ವಲೋಕದವರಿಂದ ಸಂಪೂರ್ಣ ನಿರಪೇಕ್ಷನಾಗಿದ್ದಾನೆ.

فِيهِ ءَايَٰتٌۢ بَيِّنَٰتٌ مَّقَامُ إِبْرَٰهِيمَ ۖ وَمَن دَخَلَهُۥ كَانَ ءَامِنًا ۗ وَلِلَّهِ عَلَى ٱلنَّاسِ حِجُّ ٱلْبَيْتِ مَنِ ٱسْتَطَاعَ إِلَيْهِ سَبِيلًا ۚ وَمَن كَفَرَ فَإِنَّ ٱللَّهَ غَنِىٌّ عَنِ ٱلْعَٰلَمِينَ ﴿٩٧﴾

98. ಹೇಳಿರಿ: "ಓ ಗ್ರಂಥದವರೇ! ನೀವು ಅಲ್ಲಾಹನ ವಚನಗಳನ್ನು ಏಕೆ ನಿಷೇಧಿಸುತ್ತೀರಿ? ನೀವು ಮಾಡುವ ಎಲ್ಲಾ ಕಾರ್ಯಗಳಿಗೂ ಅಲ್ಲಾಹು ಸಾಕ್ಷಿಯಲ್ಲವೇ?"

قُلْ يَٰٓأَهْلَ ٱلْكِتَٰبِ لِمَ تَكْفُرُونَ بِـَٔايَٰتِ ٱللَّهِ وَٱللَّهُ شَهِيدٌ عَلَىٰ مَا تَعْمَلُونَ ﴿٩٨﴾

99. ಹೇಳಿರಿ: "ಓ ಗ್ರಂಥದವರೇ! ಸತ್ಯವಿಶ್ವಾಸ ಸ್ವೀಕರಿಸಿದವರನ್ನು ನೀವು ಅಲ್ಲಾಹನ ಮಾರ್ಗದಿಂದ ಏಕೆ ತಡೆಯುತ್ತೀರಿ ಮತ್ತು ಅದರಲ್ಲಿ ವಕ್ರತೆಯನ್ನು ಏಕೆ ಹುಡುಕುತ್ತೀರಿ? (ಅದು ನೇರವಾಗಿದೆ ಎಂಬುದಕ್ಕೆ) ನೀವೇ ಸಾಕ್ಷಿಗಳಾಗಿದ್ದೀರಿ. ನೀವು ಮಾಡುತ್ತಿರುವುದರ ಕುರಿತು ಅಲ್ಲಾಹು ತಿಳಿಯದವನಲ್ಲ."

قُلْ يَٰٓأَهْلَ ٱلْكِتَٰبِ لِمَ تَصُدُّونَ عَن سَبِيلِ ٱللَّهِ مَنْ ءَامَنَ تَبْغُونَهَا عِوَجًا وَأَنتُمْ شُهَدَآءُ ۗ وَمَا ٱللَّهُ بِغَٰفِلٍ عَمَّا تَعْمَلُونَ ﴿٩٩﴾

100. ಓ ಸತ್ಯವಿಶ್ವಾಸಿಗಳೇ! ನೀವು ಗ್ರಂಥ ನೀಡಲಾದವರಲ್ಲಿ ಸೇರಿದ ಪಂಗಡವನ್ನು ಅನುಸರಿಸಿದರೆ, ನೀವು ಸತ್ಯವಿಶ್ವಾಸಿಗಳಾದ ಬಳಿಕವೂ ಅವರು ನಿಮ್ಮನ್ನು ಸತ್ಯನಿಷೇಧಿಗಳನ್ನಾಗಿ ಮಾಡುವರು.

يَٰٓأَيُّهَا ٱلَّذِينَ ءَامَنُوٓا۟ إِن تُطِيعُوا۟ فَرِيقًا مِّنَ ٱلَّذِينَ أُوتُوا۟ ٱلْكِتَٰبَ يَرُدُّوكُم بَعْدَ إِيمَٰنِكُمْ كَٰفِرِينَ ﴿١٠٠﴾

101. ನೀವು ಹೇಗೆ ಸತ್ಯನಿಷೇಧಿಗಳಾಗುವಿರಿ? ನಿಮಗೆ ಅಲ್ಲಾಹನ ವಚನಗಳನ್ನು ಓದಿಕೊಡಲಾಗುತ್ತಿದೆ ಮತ್ತು ನಿಮ್ಮ ನಡುವೆ ಅವನ ಸಂದೇಶವಾಹಕರಿದ್ದಾರೆ. ಯಾರು ಅಲ್ಲಾಹನನ್ನು (ಇಸ್ಲಾಂ ಧರ್ಮವನ್ನು) ಬಿಗಿಯಾಗಿ ಹಿಡಿಯುತ್ತಾನೋ ಅವನನ್ನು ನೇರಮಾರ್ಗಕ್ಕೆ ಮುನ್ನಡೆಸಲಾಗಿದೆ.

وَكَيۡفَ تَكۡفُرُونَ وَأَنتُمۡ تُتۡلَىٰ عَلَيۡكُمۡ ءَايَٰتُ
ٱللَّهِ وَفِيكُمۡ رَسُولُهُۥۗ وَمَن يَعۡتَصِم بِٱللَّهِ فَقَدۡ
هُدِيَ إِلَىٰ صِرَٰطٖ مُّسۡتَقِيمٖ ١٠١

102. ಓ ಸತ್ಯವಿಶ್ವಾಸಿಗಳೇ! ನೀವು ಅಲ್ಲಾಹನನ್ನು ಭಯಪಡಬೇಕಾದಂತೆಯೇ ಭಯಪಡಿರಿ. ಮುಸ್ಲಿಮರಾಗಿಯೇ ಹೊರತು ನೀವು ಇಹಲೋಕ ತ್ಯಜಿಸಬೇಡಿ.

يَٰٓأَيُّهَا ٱلَّذِينَ ءَامَنُواْ ٱتَّقُواْ ٱللَّهَ حَقَّ تُقَاتِهِۦ
وَلَا تَمُوتُنَّ إِلَّا وَأَنتُم مُّسۡلِمُونَ ١٠٢

103. ನೀವೆಲ್ಲರೂ ಒಟ್ಟಾಗಿ ಅಲ್ಲಾಹನ ಹಗ್ಗವನ್ನು ಬಿಗಿಯಾಗಿ ಹಿಡಿಯಿರಿ. ವಿಭಿನ್ನ ಪಂಗಡಗಳಾಗಿ ಬೇರ್ಪಡಬೇಡಿ. ನೀವು ವೈರಿಗಳಾಗಿದ್ದಾಗ ಅಲ್ಲಾಹು ನಿಮಗೆ ದಯಪಾಲಿಸಿದ ಅನುಗ್ರಹವನ್ನು ಸ್ಮರಿಸಿರಿ. ಅವನು ನಿಮ್ಮ ಹೃದಯಗಳನ್ನು ಬೆಸೆದು, ಅವನ ಅನುಗ್ರಹದ ನಿಮಿತ್ತ ನೀವು ಪರಸ್ಪರ ಸಹೋದರರಾದಿರಿ. ನೀವು ಅಗ್ನಿಕುಂಡದ ಅಂಚಿನಲ್ಲಿದ್ದಿರಿ. ಆಗ ಅವನು ನಿಮ್ಮನ್ನು ಅದರಿಂದ ರಕ್ಷಿಸಿದನು. ಈ ರೀತಿ ಅಲ್ಲಾಹು ಅವನ ದೃಷ್ಟಾಂತಗಳನ್ನು ನಿಮಗೆ ವಿವರಿಸಿಕೊಡುತ್ತಾನೆ. ನೀವು ಸನ್ಮಾರ್ಗ ಪಡೆಯುವುದಕ್ಕಾಗಿ.

وَٱعۡتَصِمُواْ بِحَبۡلِ ٱللَّهِ جَمِيعٗا وَلَا تَفَرَّقُواْۚ
وَٱذۡكُرُواْ نِعۡمَتَ ٱللَّهِ عَلَيۡكُمۡ إِذۡ كُنتُمۡ أَعۡدَآءٗ
فَأَلَّفَ بَيۡنَ قُلُوبِكُمۡ فَأَصۡبَحۡتُم بِنِعۡمَتِهِۦٓ
إِخۡوَٰنٗا وَكُنتُمۡ عَلَىٰ شَفَا حُفۡرَةٖ مِّنَ ٱلنَّارِ
فَأَنقَذَكُم مِّنۡهَاۗ كَذَٰلِكَ يُبَيِّنُ ٱللَّهُ لَكُمۡ
ءَايَٰتِهِۦ لَعَلَّكُمۡ تَهۡتَدُونَ ١٠٣

104. ನಿಮ್ಮಲ್ಲಿ ಒಳಿತಿಗೆ ಆಮಂತ್ರಿಸುವ, ಒಳಿತನ್ನು ಆದೇಶಿಸುವ ಮತ್ತು ಕೆಡುಕನ್ನು ವಿರೋಧಿಸುವ ಒಂದು ಸಮುದಾಯವು ಉಂಟಾಗಲಿ. ಅವರೇ ಯಶಸ್ವಿಯಾದವರು.

وَلۡتَكُن مِّنكُمۡ أُمَّةٞ يَدۡعُونَ إِلَى ٱلۡخَيۡرِ
وَيَأۡمُرُونَ بِٱلۡمَعۡرُوفِ وَيَنۡهَوۡنَ عَنِ ٱلۡمُنكَرِۚ
وَأُوْلَٰٓئِكَ هُمُ ٱلۡمُفۡلِحُونَ ١٠٤

105. ತಮ್ಮ ಬಳಿಗೆ ಸ್ಪಷ್ಟ ಸಾಕ್ಷ್ಯಾಧಾರಗಳು ಬಂದ ಬಳಿಕವೂ ಪಂಗಡಗಳಾಗಿ ಬೇರ್ಪಟ್ಟು ಭಿನ್ನಮತ ತಳೆದವರಂತೆ ನೀವಾಗಬೇಡಿ. ಅವರಿಗೆ ಭಯಾನಕ ಶಿಕ್ಷೆಯಿದೆ.

وَلَا تَكُونُواْ كَٱلَّذِينَ تَفَرَّقُواْ وَٱخۡتَلَفُواْ مِنۢ
بَعۡدِ مَا جَآءَهُمُ ٱلۡبَيِّنَٰتُۚ وَأُوْلَٰٓئِكَ لَهُمۡ عَذَابٌ
عَظِيمٞ ١٠٥

106. ಕೆಲವು ಮುಖಗಳು ಬೆಳ್ಳಗಾಗುವ ಮತ್ತು ಕೆಲವು ಮುಖಗಳು ಕಪ್ಪಗಾಗುವ ದಿನ! ಮುಖಗಳು ಕಪ್ಪಗಾದವರೊಡನೆ ಕೇಳಲಾಗುವುದು: “ನೀವು ಸತ್ಯವಿಶ್ವಾಸಿಗಳಾದ ಬಳಿಕ ಸತ್ಯನಿಷೇಧಿಗಳಾಗಿ ಬಿಟ್ಟಿರಾ? ನೀವು ಸತ್ಯನಿಷೇಧಿಗಳಾದ ಕಾರಣ ಶಿಕ್ಷೆಯ ರುಚಿಯನ್ನು ಸವಿಯಿರಿ.”

يَوۡمَ تَبۡيَضُّ وُجُوهٞ وَتَسۡوَدُّ وُجُوهٞۚ فَأَمَّا ٱلَّذِينَ
ٱسۡوَدَّتۡ وُجُوهُهُمۡ أَكَفَرۡتُم بَعۡدَ إِيمَٰنِكُمۡ
فَذُوقُواْ ٱلۡعَذَابَ بِمَا كُنتُمۡ تَكۡفُرُونَ ١٠٦

107. ಮುಖಗಳು ಬೆಳ್ಳಗಾದವರು ಯಾರೋ—ಅವರು ಅಲ್ಲಾಹನ ದಯೆಯಲ್ಲಿರುವರು. ಅವರು ಅದರಲ್ಲಿ ಶಾಶ್ವತವಾಗಿ

وَأَمَّا ٱلَّذِينَ ٱبۡيَضَّتۡ وُجُوهُهُمۡ فَفِي رَحۡمَةِ ٱللَّهِۖ
هُمۡ فِيهَا خَٰلِدُونَ ١٠٧

ವಾಸಿಸುವರು.

108. ಇವು ಅಲ್ಲಾಹನ ವಚನಗಳಾಗಿವೆ. ನಾವು ಇವುಗಳನ್ನು ನಿಮಗೆ ಸತ್ಯವಾಗಿ ಓದಿಕೊಡುತ್ತಿದ್ದೇವೆ. ಅಲ್ಲಾಹು ಸರ್ವಲೋಕದವರಿಗೆ ಅನ್ಯಾಯ ಮಾಡುವ ಇರಾದೆಯನ್ನು ಹೊಂದಿಲ್ಲ.

تِلۡكَ ءَايَٰتُ ٱللَّهِ نَتۡلُوهَا عَلَيۡكَ بِٱلۡحَقِّۗ وَمَا ٱللَّهُ يُرِيدُ ظُلۡمٗا لِّلۡعَٰلَمِينَ ١٠٨

109. ಭೂಮ್ಯಾಕಾಶಗಳಲ್ಲಿರುವ ವಸ್ತುಗಳೆಲ್ಲವೂ ಅಲ್ಲಾಹನಿಗೆ ಸೇರಿದ್ದು. ಎಲ್ಲಾ ವಿಷಯಗಳೂ ಅಲ್ಲಾಹನ ಬಳಿಗೇ ಮರಳುತ್ತವೆ.

وَلِلَّهِ مَا فِي ٱلسَّمَٰوَٰتِ وَمَا فِي ٱلۡأَرۡضِۚ وَإِلَى ٱللَّهِ تُرۡجَعُ ٱلۡأُمُورُ ١٠٩

110. ನೀವು ಮನುಷ್ಯರಿಗಾಗಿ ಹೊರತರಲಾದ ಉತ್ತಮ ಸಮುದಾಯವಾಗಿದ್ದೀರಿ. ನೀವು ಒಳಿತನ್ನು ಆದೇಶಿಸುತ್ತೀರಿ, ಕೆಡುಕನ್ನು ವಿರೋಧಿಸುತ್ತೀರಿ ಮತ್ತು ಅಲ್ಲಾಹನಲ್ಲಿ ವಿಶ್ವಾಸವಿಡುತ್ತೀರಿ. ಗ್ರಂಥದವರು ಸತ್ಯವಿಶ್ವಾಸಿಗಳಾಗುತ್ತಿದ್ದರೆ ಅದು ಅವರಿಗೆ ಒಳಿತಾಗಿರುತ್ತಿತ್ತು. ಅವರಲ್ಲಿ ಸತ್ಯವಿಶ್ವಾಸಿಗಳಿದ್ದಾರೆ. ಆದರೆ ಅವರಲ್ಲಿ ಹೆಚ್ಚಿನವರು ದುಷ್ಕರ್ಮಿಗಳಾಗಿದ್ದಾರೆ.

كُنتُمۡ خَيۡرَ أُمَّةٍ أُخۡرِجَتۡ لِلنَّاسِ تَأۡمُرُونَ بِٱلۡمَعۡرُوفِ وَتَنۡهَوۡنَ عَنِ ٱلۡمُنكَرِ وَتُؤۡمِنُونَ بِٱللَّهِۗ وَلَوۡ ءَامَنَ أَهۡلُ ٱلۡكِتَٰبِ لَكَانَ خَيۡرٗا لَّهُمۚ مِّنۡهُمُ ٱلۡمُؤۡمِنُونَ وَأَكۡثَرُهُمُ ٱلۡفَٰسِقُونَ ١١٠

111. ಕೆಲವು ಕೀಟಲೆಗಳನ್ನು ಬಿಟ್ಟರೆ ಅವರು ನಿಮಗೆ ಯಾವುದೇ ತೊಂದರೆ ಮಾಡಲಾರರು. ಅವರು ನಿಮ್ಮೊಂದಿಗೆ ಯುದ್ಧ ಮಾಡಿದರೆ ಬೆನ್ನು ತಿರುಗಿಸಿ ಓಡುವರು. ನಂತರ ಅವರಿಗೆ ಯಾವುದೇ ಸಹಾಯವು ದೊರೆಯುವುದಿಲ್ಲ.

لَن يَضُرُّوكُمۡ إِلَّآ أَذٗىۖ وَإِن يُقَٰتِلُوكُمۡ يُوَلُّوكُمُ ٱلۡأَدۡبَارَ ثُمَّ لَا يُنصَرُونَ ١١١

112. ಅವರು ಎಲ್ಲೇ ಇದ್ದರೂ ಅವರ ಮೇಲೆ ಅವಮಾನವನ್ನು ಹೇರಲಾಗಿದೆ. ಅಲ್ಲಾಹನ ಹಗ್ಗದ (ಕರಾರಿನ) ಅಥವಾ ಜನರ ಹಗ್ಗದ (ಕರಾರಿನ) ಆಶ್ರಯದಲ್ಲಿರುವವರ ಹೊರತು. ಅವರು ಅಲ್ಲಾಹನ ಕೋಪಕ್ಕೆ ಪಾತ್ರರಾಗಿದ್ದಾರೆ. ಅವರ ಮೇಲೆ ದರಿದ್ರತೆಯನ್ನು ಹೇರಲಾಗಿದೆ. ಅದೇಕೆಂದರೆ ಅವರು ಅಲ್ಲಾಹನ ವಚನಗಳನ್ನು ನಿಷೇಧಿಸುತ್ತಿದ್ದರು ಮತ್ತು ಪ್ರವಾದಿಗಳನ್ನು ಅನ್ಯಾಯವಾಗಿ ಕೊಲ್ಲುತ್ತಿದ್ದರು. ಅದೇಕೆಂದರೆ ಅವರು ಅವಿಧೇಯತೆ ತೋರುತ್ತಿದ್ದರು ಮತ್ತು ಅತಿರೇಕವೆಸಗುತ್ತಿದ್ದರು.

ضُرِبَتۡ عَلَيۡهِمُ ٱلذِّلَّةُ أَيۡنَ مَا ثُقِفُوٓاْ إِلَّا بِحَبۡلٖ مِّنَ ٱللَّهِ وَحَبۡلٖ مِّنَ ٱلنَّاسِ وَبَآءُو بِغَضَبٖ مِّنَ ٱللَّهِ وَضُرِبَتۡ عَلَيۡهِمُ ٱلۡمَسۡكَنَةُۚ ذَٰلِكَ بِأَنَّهُمۡ كَانُواْ يَكۡفُرُونَ بِـَٔايَٰتِ ٱللَّهِ وَيَقۡتُلُونَ ٱلۡأَنۢبِيَآءَ بِغَيۡرِ حَقّٖۚ ذَٰلِكَ بِمَا عَصَواْ وَّكَانُواْ يَعۡتَدُونَ ١١٢

113. ಅವರೆಲ್ಲರೂ ಒಂದೇ ರೀತಿಯಲ್ಲ. ರಾತ್ರಿ ವೇಳೆಯಲ್ಲಿ ಅಲ್ಲಾಹನ ವಚನಗಳನ್ನು ಪಠಿಸುತ್ತಾ ಮತ್ತು ಸಾಷ್ಟಾಂಗ ಮಾಡುತ್ತಾ (ಸತ್ಯದಲ್ಲಿ) ದೃಢವಾಗಿ ನಿಂತ ಒಂದು ಗುಂಪು ಗ್ರಂಥದವರಲ್ಲಿದೆ.

لَيۡسُواْ سَوَآءٗۗ مِّنۡ أَهۡلِ ٱلۡكِتَٰبِ أُمَّةٞ قَآئِمَةٞ يَتۡلُونَ ءَايَٰتِ ٱللَّهِ ءَانَآءَ ٱلَّيۡلِ وَهُمۡ يَسۡجُدُونَ ١١٣

114. ಅವರು ಅಲ್ಲಾಹನಲ್ಲಿ ಮತ್ತು ಅಂತ್ಯದಿನದಲ್ಲಿ ವಿಶ್ವಾಸವಿಡುತ್ತಾರೆ, ಒಳಿತನ್ನು ಆದೇಶಿಸುತ್ತಾರೆ ಮತ್ತು ಕೆಡುಕನ್ನು ವಿರೋಧಿಸುತ್ತಾರೆ ಹಾಗೂ ಸತ್ಕಾರ್ಯಗಳಲ್ಲಿ ತ್ವರೆ ಮಾಡುತ್ತಾ ಮುನ್ನುಗ್ಗುತ್ತಾರೆ.

يُؤۡمِنُونَ بِٱللَّهِ وَٱلۡيَوۡمِ ٱلۡأٓخِرِ وَيَأۡمُرُونَ بِٱلۡمَعۡرُوفِ وَيَنۡهَوۡنَ عَنِ ٱلۡمُنكَرِ وَيُسَٰرِعُونَ فِي ٱلۡخَيۡرَٰتِۖ وَأُوْلَٰٓئِكَ مِنَ ٱلصَّٰلِحِينَ ١١٤

ಅವರೇ ನೀತಿವಂತರಲ್ಲಿ ಸೇರಿದವರು.

---

115. ಅವರು ಯಾವುದೇ ಒಳಿತು ಮಾಡಿದರೂ ಅದು ತಿರಸ್ಕರಿಸಲ್ಪಡುವುದಿಲ್ಲ. ಅಲ್ಲಾಹು ದೇವಭಯವುಳ್ಳವರನ್ನು ಬಹಳ ಚೆನ್ನಾಗಿ ತಿಳಿದಿದ್ದಾನೆ.

وَمَا يَفۡعَلُواْ مِنۡ خَيۡرٖ فَلَن يُكۡفَرُوهُۗ وَٱللَّهُ عَلِيمُۢ بِٱلۡمُتَّقِينَ ١١٥

---

116. ನಿಶ್ಚಯವಾಗಿಯೂ ಸತ್ಯನಿಷೇಧಿಗಳು ಯಾರೋ—ಅವರಿಗೆ ಅವರ ಆಸ್ತಿಗಳು ಮತ್ತು ಮಕ್ಕಳು ಅಲ್ಲಾಹನ ಬಳಿ ಯಾವುದೇ ಉಪಕಾರ ಮಾಡುವುದಿಲ್ಲ. ಅವರೇ ನರಕವಾಸಿಗಳು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು.

إِنَّ ٱلَّذِينَ كَفَرُواْ لَن تُغۡنِيَ عَنۡهُمۡ أَمۡوَٰلُهُمۡ وَلَآ أَوۡلَٰدُهُم مِّنَ ٱللَّهِ شَيۡـٔٗاۖ وَأُوْلَٰٓئِكَ أَصۡحَٰبُ ٱلنَّارِۖ هُمۡ فِيهَا خَٰلِدُونَ ١١٦

---

117. ಈ ಇಹಲೋಕ ಜೀವನದಲ್ಲಿ ಅವರು ಖರ್ಚು ಮಾಡುವುದನ್ನು ಸ್ವಯಂ ಅಕ್ರಮವೆಸಗಿದ ಜನರ ಹೊಲದಲ್ಲಿ ಬಲವಾಗಿ ಬೀಸಿ, ನಂತರ ಅದನ್ನು ಸರ್ವನಾಶ ಮಾಡಿದ ಒಂದು ಶೀತಲ ಮಾರುತಕ್ಕೆ ಹೋಲಿಸಬಹುದು. ಅಲ್ಲಾಹು ಅವರಿಗೆ ಅನ್ಯಾಯ ಮಾಡಿಲ್ಲ. ಆದರೆ ಅವರು ಸ್ವಯಂ ಅನ್ಯಾಯವೆಸಗುತ್ತಿದ್ದಾರೆ.

مَثَلُ مَا يُنفِقُونَ فِي هَٰذِهِ ٱلۡحَيَوٰةِ ٱلدُّنۡيَا كَمَثَلِ رِيحٖ فِيهَا صِرٌّ أَصَابَتۡ حَرۡثَ قَوۡمٖ ظَلَمُوٓاْ أَنفُسَهُمۡ فَأَهۡلَكَتۡهُۚ وَمَا ظَلَمَهُمُ ٱللَّهُ وَلَٰكِنۡ أَنفُسَهُمۡ يَظۡلِمُونَ ١١٧

---

118. ಓ ಸತ್ಯವಿಶ್ವಾಸಿಗಳೇ! ನೀವು ನಿಮ್ಮವರನ್ನೇ ಹೊರತು ಬೇರೆ ಯಾರನ್ನೂ ಆಪ್ತಮಿತ್ರರನ್ನಾಗಿ ಸ್ವೀಕರಿಸಬೇಡಿ. ನಿಮಗೆ ತೊಂದರೆ ಕೊಡಲು ಅವರು ಸ್ವಲ್ಪವೂ ಹಿಂಜರಿಯುವುದಿಲ್ಲ. ನೀವು ತೊಂದರೆಗೊಳಗಾಗಬೇಕೆಂದೇ ಅವರು ಆಶಿಸುತ್ತಾರೆ. ಅವರ ಬಾಯಿಯಿಂದ ದ್ವೇಷವು ಈಗಾಗಲೇ ಪ್ರಕಟವಾಗಿದೆ. ಅವರ ಹೃದಯಗಳಲ್ಲಿ ಅದಕ್ಕಿಂತಲೂ ದೊಡ್ಡ ದ್ವೇಷವು ಅಡಗಿಕೊಂಡಿದೆ. ನಾವು ನಿಮಗೆ ವಚನಗಳನ್ನು ಸ್ಪಷ್ಟವಾಗಿ ವಿವರಿಸಿಕೊಟ್ಟಿದ್ದೇವೆ. ನೀವು ಬುದ್ಧಿವಂತರಾಗಿದ್ದರೆ (ಇದರ ಬಗ್ಗೆ ಗಮನ ಹರಿಸಿ).

يَٰٓأَيُّهَا ٱلَّذِينَ ءَامَنُواْ لَا تَتَّخِذُواْ بِطَانَةٗ مِّن دُونِكُمۡ لَا يَأۡلُونَكُمۡ خَبَالٗا وَدُّواْ مَا عَنِتُّمۡ قَدۡ بَدَتِ ٱلۡبَغۡضَآءُ مِنۡ أَفۡوَٰهِهِمۡ وَمَا تُخۡفِي صُدُورُهُمۡ أَكۡبَرُۚ قَدۡ بَيَّنَّا لَكُمُ ٱلۡأٓيَٰتِۖ إِن كُنتُمۡ تَعۡقِلُونَ ١١٨

---

119. ನೀವು ಅವರನ್ನು ಪ್ರೀತಿಸುತ್ತೀರಿ. ಆದರೆ ಅವರು ನಿಮ್ಮನ್ನು ಪ್ರೀತಿಸುವುದಿಲ್ಲ. ನೀವು ಎಲ್ಲಾ ಗ್ರಂಥಗಳಲ್ಲೂ ವಿಶ್ವಾಸವಿಡುತ್ತೀರಿ. ನಿಮ್ಮನ್ನು ಭೇಟಿಯಾಗುವಾಗ, “ನಾವು ವಿಶ್ವಾಸವಿಟ್ಟಿದ್ದೇವೆ” ಎಂದು ಅವರು ಹೇಳುತ್ತಾರೆ. ಆದರೆ ಅವರು ಏಕಾಂತದಲ್ಲಿರುವಾಗ ನಿಮ್ಮ ಮೇಲಿನ ಕೋಪದಿಂದ ಬೆರಳುಗಳನ್ನು ಕಚ್ಚುತ್ತಾರೆ. ಹೇಳಿರಿ: “ನಿಮ್ಮ ಕೋಪದೊಂದಿಗೇ ನೀವು ಪ್ರಾಣವನ್ನು ತ್ಯಜಿಸಿರಿ. ನಿಶ್ಚಯವಾಗಿಯೂ ಅಲ್ಲಾಹು ಹೃದಯಗಳಲ್ಲಿರುವುದನ್ನು ತಿಳಿಯುತ್ತಾನೆ.”

هَٰٓأَنتُمۡ أُوْلَآءِ تُحِبُّونَهُمۡ وَلَا يُحِبُّونَكُمۡ وَتُؤۡمِنُونَ بِٱلۡكِتَٰبِ كُلِّهِۦ وَإِذَا لَقُوكُمۡ قَالُوٓاْ ءَامَنَّا وَإِذَا خَلَوۡاْ عَضُّواْ عَلَيۡكُمُ ٱلۡأَنَامِلَ مِنَ ٱلۡغَيۡظِۚ قُلۡ مُوتُواْ بِغَيۡظِكُمۡۗ إِنَّ ٱللَّهَ عَلِيمُۢ بِذَاتِ ٱلصُّدُورِ ١١٩

---

120. ನಿಮಗೆ ಒಳಿತಾದರೆ ಅವರಿಗೆ ಸಂಕಟವಾಗುತ್ತದೆ. ನಿಮಗೆ ಕೆಡುಕುಂಟಾದರೆ ಅವರು ಸಂತೋಷಪಡುತ್ತಾರೆ. ನೀವು ತಾಳ್ಮೆ

إِن تَمۡسَسۡكُمۡ حَسَنَةٞ تَسُؤۡهُمۡ وَإِن تُصِبۡكُمۡ سَيِّئَةٞ يَفۡرَحُواْ بِهَاۖ وَإِن تَصۡبِرُواْ وَتَتَّقُواْ لَا

يَضُرُّكُمۡ كَيۡدُهُمۡ شَيۡـًٔاۗ إِنَّ ٱللَّهَ بِمَا يَعۡمَلُونَ مُحِيطٞ ﴿١٢٠﴾

ವಹಿಸಿದರೆ ಮತ್ತು ಅಲ್ಲಾಹನನ್ನು ಭಯಪಟ್ಟು ಜೀವಿಸಿದರೆ, ಅವರ ಕುತಂತ್ರವು ನಿಮಗೆ ಯಾವುದೇ ರೀತಿಯಲ್ಲೂ ತೊಂದರೆ ಮಾಡುವುದಿಲ್ಲ. ನಿಶ್ಚಯವಾಗಿಯೂ ಅಲ್ಲಾಹು ಅವರು ಮಾಡುತ್ತಿರುವ ಕರ್ಮಗಳನ್ನು ಆವರಿಸಿಕೊಂಡಿದ್ದಾನೆ.

---

وَإِذۡ غَدَوۡتَ مِنۡ أَهۡلِكَ تُبَوِّئُ ٱلۡمُؤۡمِنِينَ مَقَٰعِدَ لِلۡقِتَالِۗ وَٱللَّهُ سَمِيعٌ عَلِيمٌ ﴿١٢١﴾

121. (ಓ ಪ್ರವಾದಿಯವರೇ!) ಸತ್ಯವಿಶ್ವಾಸಿಗಳನ್ನು ಯುದ್ಧದ ಆಯಕಟ್ಟಿನ ಸ್ಥಳಗಳಲ್ಲಿ ನಿಲ್ಲಿಸಲು ನೀವು ನಸುಕಿನಲ್ಲೇ ಮನೆಯಿಂದ ಹೊರಟ ಸಂದರ್ಭ(ವನ್ನು ಸ್ಮರಿಸಿ). ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

---

إِذۡ هَمَّت طَّآئِفَتَانِ مِنكُمۡ أَن تَفۡشَلَا وَٱللَّهُ وَلِيُّهُمَاۗ وَعَلَى ٱللَّهِ فَلۡيَتَوَكَّلِ ٱلۡمُؤۡمِنُونَ ﴿١٢٢﴾

122. ನಿಮ್ಮಲ್ಲಿನ ಎರಡು ಗುಂಪುಗಳು ಹೇಡಿಗಳಾಗಲು ಮುಂದಾದ ಸಂದರ್ಭ.[1] ಅಲ್ಲಾಹು ಆ ಎರಡು ಪಂಗಡಗಳ ರಕ್ಷಕನಾಗಿದ್ದಾನೆ. ಸತ್ಯವಿಶ್ವಾಸಿಗಳು ಅಲ್ಲಾಹನಲ್ಲಿಯೇ ಭರವಸೆಯಿಡಲಿ.

---

وَلَقَدۡ نَصَرَكُمُ ٱللَّهُ بِبَدۡرٖ وَأَنتُمۡ أَذِلَّةٞۖ فَٱتَّقُواْ ٱللَّهَ لَعَلَّكُمۡ تَشۡكُرُونَ ﴿١٢٣﴾

123. ಬದ್ರ್‌ನಲ್ಲಿ ನೀವು ಅತ್ಯಂತ ದುರ್ಬಲರಾಗಿದ್ದಾಗ, ಅಲ್ಲಾಹು ನಿಮಗೆ ಸಹಾಯ ಮಾಡಿದ್ದಾನೆ. ಆದ್ದರಿಂದ ನೀವು ಅಲ್ಲಾಹನನ್ನು ಭಯಪಡಿರಿ. ನೀವು ಕೃತಜ್ಞರಾಗುವುದಕ್ಕಾಗಿ.

---

إِذۡ تَقُولُ لِلۡمُؤۡمِنِينَ أَلَن يَكۡفِيَكُمۡ أَن يُمِدَّكُمۡ رَبُّكُم بِثَلَٰثَةِ ءَالَٰفٖ مِّنَ ٱلۡمَلَٰٓئِكَةِ مُنزَلِينَ ﴿١٢٤﴾

124. “ನಿಮ್ಮ ಪರಿಪಾಲಕನು (ಅಲ್ಲಾಹು) ಮೂರು ಸಾವಿರ ದೇವದೂ- ತರುಗಳನ್ನು ಇಳಿಸಿ ನಿಮಗೆ ಸಹಾಯ ಮಾಡಿದರೆ ಸಾಕಾಗದೇ?” ಎಂದು ನೀವು ಸತ್ಯವಿಶ್ವಾಸಿಗಳೊಡನೆ ಕೇಳಿದ ಸಂದರ್ಭ(ವನ್ನು ಸ್ಮರಿಸಿ).

---

بَلَىٰٓۚ إِن تَصۡبِرُواْ وَتَتَّقُواْ وَيَأۡتُوكُم مِّن فَوۡرِهِمۡ هَٰذَا يُمۡدِدۡكُمۡ رَبُّكُم بِخَمۡسَةِ ءَالَٰفٖ مِّنَ ٱلۡمَلَٰٓئِكَةِ مُسَوِّمِينَ ﴿١٢٥﴾

125. ಹೌದು! ನೀವು ತಾಳ್ಮೆಯಿಂದಿದ್ದರೆ ಮತ್ತು ಅಲ್ಲಾಹನನ್ನು ಭಯಪಟ್ಟರೆ ನಿಮ್ಮ ಬಳಿಗೆ ಶತ್ರುಗಳು ಯಾವ ಕ್ಷಣದಲ್ಲಿ ಬಂದರೂ ನಿಮ್ಮ ಪರಿಪಾಲಕನು (ಅಲ್ಲಾಹು) ವಿಶೇಷ ಗುರುತುಗಳಿರುವ ಐದು ಸಾವಿರ ದೇವದೂತರುಗಳ ಮೂಲಕ ನಿಮಗೆ ಸಹಾಯ ಮಾಡುವನು.

---

وَمَا جَعَلَهُ ٱللَّهُ إِلَّا بُشۡرَىٰ لَكُمۡ وَلِتَطۡمَئِنَّ قُلُوبُكُم بِهِۦۗ وَمَا ٱلنَّصۡرُ إِلَّا مِنۡ عِندِ ٱللَّهِ ٱلۡعَزِيزِ ٱلۡحَكِيمِ ﴿١٢٦﴾

126. ಅಲ್ಲಾಹು ಇದನ್ನು (ಸಹಾಯವನ್ನು) ಮಾಡಿದ್ದು ನಿಮಗೊಂದು ಸುವಾರ್ತೆಯಾಗಿ ಮತ್ತು ನಿಮ್ಮ ಹೃದಯಗಳು ಶಾಂತವಾಗಲಿಕ್ಕಾಗಿ ಮಾತ್ರ. ಸಹಾಯವು ಪ್ರಬಲನು ಮತ್ತು ವಿವೇಕಪೂರ್ಣನಾದ ಅಲ್ಲಾಹನಿಂದಲೇ ಆಗಿದೆ.

---

[1] ಉಹುದ್ ಯುದ್ಧದ ಸಂದರ್ಭ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಕಾಲಾಳುಪಡೆ, ಅಶ್ವಸೇನೆ ಮತ್ತು ಬಿಲ್ಲುಗಾರರನ್ನು ಕೆಲವು ಆಯಕಟ್ಟಿನ ಸ್ಥಳಗಳಲ್ಲಿ ನಿಲ್ಲಿಸಿದ್ದರು. ಯುದ್ಧ ತಂತ್ರದ ಪ್ರಮುಖ ಭಾಗವಾಗಿ ಒಂದು ಗುಡ್ಡೆಯ ಮೇಲೆ ಕಾವಲು ನಿಲ್ಲಿ- ಸಲಾಗಿದ್ದ ಬಿಲ್ಲುಗಾರರು ತಮ್ಮ ಕಾರ್ಯನಿರ್ವಹಣೆಯಲ್ಲಿ ತಪ್ಪೆಸಗಿದ ಕಾರಣ ಉಹುದ್ ಯುದ್ಧದಲ್ಲಿ ಮುಸ್ಲಿಮರಿಗೆ ಅನೇಕ ನಾಶ-ನಷ್ಟಗಳು ಸಂಭವಿಸಿದವು. ಯುದ್ಧದಲ್ಲಿ ಹೋರಾಡುತ್ತಿದ್ದ ಎರಡು ಗೋತ್ರದ ಜನರು ದಿಗಿಲುಗೊಂಡು ಯುದ್ಧದಿಂದ ಪಲಾಯನ ಮಾಡಬೇಕೆಂದು ಒಂದು ಕ್ಷಣ ಯೋಚಿಸಿದರು. ಆದರೆ ಅಲ್ಲಾಹು ಅವರ ಮನಸ್ಸಿಗೆ ದೃಢತೆಯನ್ನು ನೀಡಿ ಅವರನ್ನು ನಿಲ್ಲಿಸಿದನು.

127. ಇದು (ಈ ಸಹಾಯವು ಬಂದಿರುವುದು) ಅಲ್ಲಾಹು ಸತ್ಯನಿಷೇಧಿಗಳ ಒಂದು ಭಾಗವನ್ನು ಕತ್ತರಿಸುವುದಕ್ಕಾಗಿ ಅಥವಾ ಅವರನ್ನು ಸಂಪೂರ್ಣ ದಮನ ಮಾಡುವುದಕ್ಕಾಗಿ. ಅವರೆಲ್ಲರೂ ಹತಾಶರಾಗಿ ಮರಳಿ ಹೋಗಲೆಂದು.

لِيَقۡطَعَ طَرَفٗا مِّنَ ٱلَّذِينَ كَفَرُوٓاْ أَوۡ يَكۡبِتَهُمۡ فَيَنقَلِبُواْ خَآئِبِينَ ﴿١٢٧﴾

128. (ಓ ಪ್ರವಾದಿಯವರೇ!) ತೀರ್ಮಾನದಲ್ಲಿ ನಿಮಗೆ ಯಾವುದೇ ಅಧಿಕಾರವಿಲ್ಲ. ಅಲ್ಲಾಹು ಅವರ ಪಶ್ಚಾತ್ತಾಪವನ್ನು ಸ್ವೀಕರಿಸಬಹುದು ಅಥವಾ ಅವರನ್ನು ಶಿಕ್ಷಿಸಬಹುದು. ಏಕೆಂದರೆ, ನಿಶ್ಚಯವಾಗಿಯೂ ಅವರು ಅಕ್ರಮಿಗಳಾಗಿದ್ದಾರೆ.[1]

لَيۡسَ لَكَ مِنَ ٱلۡأَمۡرِ شَيۡءٌ أَوۡ يَتُوبَ عَلَيۡهِمۡ أَوۡ يُعَذِّبَهُمۡ فَإِنَّهُمۡ ظَٰلِمُونَ ﴿١٢٨﴾

129. ಭೂಮ್ಯಾಕಾಶಗಳಲ್ಲಿರುವ ಎಲ್ಲಾ ವಸ್ತುಗಳೂ ಅಲ್ಲಾಹನಿಗೆ ಸೇರಿದ್ದು. ಅವನು ಇಚ್ಛಿಸುವವರಿಗೆ ಅವನು ಕ್ಷಮಿಸುತ್ತಾನೆ ಮತ್ತು ಅವನು ಇಚ್ಛಿಸುವವರನ್ನು ಶಿಕ್ಷಿಸುತ್ತಾನೆ. ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

وَلِلَّهِ مَا فِي ٱلسَّمَٰوَٰتِ وَمَا فِي ٱلۡأَرۡضِۚ يَغۡفِرُ لِمَن يَشَآءُ وَيُعَذِّبُ مَن يَشَآءُۚ وَٱللَّهُ غَفُورٞ رَّحِيمٞ ﴿١٢٩﴾

130. ಓ ಸತ್ಯವಿಶ್ವಾಸಿಗಳೇ! ನೀವು ಇಮ್ಮಡಿ ಮುಮ್ಮಡಿಯಾಗಿ ಬಡ್ಡಿಯನ್ನು ತಿನ್ನಬೇಡಿ. ಅಲ್ಲಾಹನನ್ನು ಭಯಪಡಿರಿ. ನೀವು ಯಶಸ್ವಿಯಾಗುವುದಕ್ಕಾಗಿ.

يَٰٓأَيُّهَا ٱلَّذِينَ ءَامَنُواْ لَا تَأۡكُلُواْ ٱلرِّبَوٰٓاْ أَضۡعَٰفٗا مُّضَٰعَفَةٗۖ وَٱتَّقُواْ ٱللَّهَ لَعَلَّكُمۡ تُفۡلِحُونَ ﴿١٣٠﴾

131. ಸತ್ಯನಿಷೇಧಿಗಳಿಗಾಗಿ ಸಿದ್ಧಗೊಳಿಸಲಾದ ನರಕಾಗ್ನಿಯನ್ನು ಭಯಪಡಿರಿ.

وَٱتَّقُواْ ٱلنَّارَ ٱلَّتِيٓ أُعِدَّتۡ لِلۡكَٰفِرِينَ ﴿١٣١﴾

132. ಅಲ್ಲಾಹನ ಮತ್ತು ಸಂದೇಶವಾಹಕರ ಆಜ್ಞಾಪಾಲನೆ ಮಾಡಿರಿ. ನಿಮಗೆ ದಯೆ ತೋರಲಾಗುವುದಕ್ಕಾಗಿ.

وَأَطِيعُواْ ٱللَّهَ وَٱلرَّسُولَ لَعَلَّكُمۡ تُرۡحَمُونَ ﴿١٣٢﴾

133. ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಕ್ಷಮೆಗಾಗಿ ಮತ್ತು ಭೂಮ್ಯಾಕಾಶಗಳಷ್ಟು ವಿಶಾಲವಾದ ಸ್ವರ್ಗಕ್ಕಾಗಿ ತ್ವರೆಯಿಂದ ಮುನ್ನುಗ್ಗಿರಿ. ಅದನ್ನು ದೇವಭಯವುಳ್ಳವರಿಗಾಗಿ ಸಿದ್ಧಗೊಳಿಸಲಾಗಿದೆ.

۞وَسَارِعُوٓاْ إِلَىٰ مَغۡفِرَةٖ مِّن رَّبِّكُمۡ وَجَنَّةٍ عَرۡضُهَا ٱلسَّمَٰوَٰتُ وَٱلۡأَرۡضُ أُعِدَّتۡ لِلۡمُتَّقِينَ ﴿١٣٣﴾

134. ಅವರು (ದೇವಭಯವುಳ್ಳವರು) ಯಾರೆಂದರೆ, ಸುಖದಲ್ಲೂ ಕಷ್ಟದಲ್ಲೂ ದಾನ ಮಾಡುವವರು, ಕೋಪವನ್ನು ನಿಗ್ರಹಿಸುವವರು ಮತ್ತು ಜನರಿಗೆ ಮನ್ನಿಸುವವರು. ಅಲ್ಲಾಹು ಒಳಿತು ಮಾಡುವವರನ್ನು ಪ್ರೀತಿಸುತ್ತಾನೆ.

ٱلَّذِينَ يُنفِقُونَ فِي ٱلسَّرَّآءِ وَٱلضَّرَّآءِ وَٱلۡكَٰظِمِينَ ٱلۡغَيۡظَ وَٱلۡعَافِينَ عَنِ ٱلنَّاسِۗ وَٱللَّهُ يُحِبُّ ٱلۡمُحۡسِنِينَ ﴿١٣٤﴾

---

[1] ಉಹುದ್ ಯುದ್ಧದಲ್ಲಿ ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮುಂದಿನ ಹಲ್ಲು ತುಂಡಾಗಿ ಮುಖಕ್ಕೆ ಗಾಯವಾದಾಗ ಅವರು ಬೇಸರದಿಂದ ಹೇಳಿದರು: "ತಮ್ಮ ಪ್ರವಾದಿಯನ್ನು ಗಾಯಗೊಳಿಸಿದ ಜನರು ಯಶಸ್ವಿಯಾಗುವುದಾದರೂ ಹೇಗೆ?" ಆಗ ಅಲ್ಲಾಹು ಅವರ ಮಾತನ್ನು ತಿದ್ದುತ್ತಾ ಈ ವಚನವನ್ನು ಅವತೀರ್ಣಗೊಳಿಸಿದನು. ಅಂದರೆ ಯಾರಿಗೆ ಸನ್ಮಾರ್ಗ ತೋರಿಸಬೇಕು ಯಾರಿಗೆ ತೋರಿಸಬಾರದು? ಯಾರನ್ನು ಶಿಕ್ಷೆ ನೀಡಬೇಕು ಮತ್ತು ಯಾರಿಗೆ ಕ್ಷಮೆ ನೀಡಬೇಕು? ಎಂಬುದನ್ನು ಅಲ್ಲಾಹು ತೀರ್ಮಾನಿಸುತ್ತಾನೆ. ಪ್ರವಾದಿಯವರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅದನ್ನು ತೀರ್ಮಾನಿಸುವ ಯಾವುದೇ ಹಕ್ಕಿಲ್ಲ.

135. ಅವರು ಏನಾದರೂ ನೀಚಕಾರ್ಯ ಮಾಡಿದರೆ ಅಥವಾ ಸ್ವಯಂ ಅಕ್ರಮವೆಸಗಿದರೆ ಅಲ್ಲಾಹನನ್ನು ಸ್ಮರಿಸಿ ತಮ್ಮ ಪಾಪಗಳಿಗೆ ಕ್ಷಮೆಯಾಚಿಸುತ್ತಾರೆ. ಅಲ್ಲಾಹನ ಹೊರತು ಪಾಪಗಳನ್ನು ಕ್ಷಮಿಸುವವರು ಯಾರು? ಅವರು ತಿಳಿದೂ ಸಹ (ಕೆಟ್ಟ) ಕಾರ್ಯಗಳಲ್ಲಿ ಹಟ ಹಿಡಿದು ಮುಂದುವರಿಯುವುದಿಲ್ಲ.

وَٱلَّذِينَ إِذَا فَعَلُواْ فَٰحِشَةً أَوۡ ظَلَمُوٓاْ أَنفُسَهُمۡ ذَكَرُواْ ٱللَّهَ فَٱسۡتَغۡفَرُواْ لِذُنُوبِهِمۡ وَمَن يَغۡفِرُ ٱلذُّنُوبَ إِلَّا ٱللَّهُ وَلَمۡ يُصِرُّواْ عَلَىٰ مَا فَعَلُواْ وَهُمۡ يَعۡلَمُونَ ١٣٥

136. ಅವರಿಗಿರುವ ಪ್ರತಿಫಲವು ಅವರ ಪರಿಪಾಲಕನ ಕಡೆಯ ಕ್ಷಮೆ ಮತ್ತು ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾ-ನಗಳಾಗಿವೆ. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಸತ್ಕರ್ಮವೆಸಗುವವರಿಗೆ ದೊರೆಯುವ ಪ್ರತಿಫಲವು ಬಹಳ ಉತ್ತಮವಾಗಿದೆ!

أُوْلَٰٓئِكَ جَزَآؤُهُم مَّغۡفِرَةٌ مِّن رَّبِّهِمۡ وَجَنَّٰتٌ تَجۡرِي مِن تَحۡتِهَا ٱلۡأَنۡهَٰرُ خَٰلِدِينَ فِيهَاۚ وَنِعۡمَ أَجۡرُ ٱلۡعَٰمِلِينَ ١٣٦

137. ನಿಮಗಿಂತ ಮುಂಚೆಯೂ ಇಂತಹ ಘಟನೆಗಳು ಗತಿಸಿ ಹೋಗಿವೆ. ಆದ್ದರಿಂದ ನೀವು ಭೂಮಿಯಲ್ಲಿ ಸಂಚರಿಸಿ ಸತ್ಯನಿಷೇಧಿಗಳ ಅಂತ್ಯವು ಹೇಗಿತ್ತೆಂದು ನೋಡಿರಿ.[1]

قَدۡ خَلَتۡ مِن قَبۡلِكُمۡ سُنَنٌ فَسِيرُواْ فِي ٱلۡأَرۡضِ فَٱنظُرُواْ كَيۡفَ كَانَ عَٰقِبَةُ ٱلۡمُكَذِّبِينَ ١٣٧

138. ಇದು (ಕುರ್‌ಆನ್) ಮನುಷ್ಯರಿಗೆ ಒಂದು ಸ್ಪಷ್ಟ ವಿವರಣೆಯಾಗಿದೆ. ದೇವಭಯವುಳ್ಳವರಿಗೆ ಸನ್ಮಾರ್ಗ ಮತ್ತು ಹಿತೋಪದೇಶವಾಗಿದೆ.

هَٰذَا بَيَانٌ لِّلنَّاسِ وَهُدًى وَمَوۡعِظَةٌ لِّلۡمُتَّقِينَ ١٣٨

139. ನೀವು ದುರ್ಬಲರಾಗಬೇಡಿ ಮತ್ತು ದುಃಖಿಸಬೇಡಿ. ನೀವು ಸತ್ಯವಿ-ಶ್ವಾಸಿಗಳಾಗಿದ್ದರೆ ನೀವೇ ಅತಿಶ್ರೇಷ್ಠರು.

وَلَا تَهِنُواْ وَلَا تَحۡزَنُواْ وَأَنتُمُ ٱلۡأَعۡلَوۡنَ إِن كُنتُم مُّؤۡمِنِينَ ١٣٩

140. ನಿಮಗೆ ಗಾಯಗಳಾಗಿದ್ದರೆ, ಆ ಜನರಿಗೂ (ಎದುರಾಳಿಗಳಿಗೂ) ಗಾಯಗಳಾಗಿದ್ದವು. ಸತ್ಯವಿಶ್ವಾಸಿಗಳು ಯಾರೆಂದು ಅಲ್ಲಾಹು ತಿಳಿಯುವುದಕ್ಕಾಗಿ ಮತ್ತು ನಿಮ್ಮಲ್ಲಿ ಕೆಲವರನ್ನು ಅವನು ಹುತಾತ್ಮರಾಗಿ ಸ್ವೀಕರಿಸುವುದಕ್ಕಾಗಿ, ನಾವು ಆ ದಿನಗಳನ್ನು (ಸೋಲು-ಗೆಲುವುಗಳನ್ನು) ಜನರ ನಡುವೆ ಬದಲಾಯಿಸುತ್ತೇವೆ.

إِن يَمۡسَسۡكُمۡ قَرۡحٌ فَقَدۡ مَسَّ ٱلۡقَوۡمَ قَرۡحٌ مِّثۡلُهُۥۚ وَتِلۡكَ ٱلۡأَيَّامُ نُدَاوِلُهَا بَيۡنَ ٱلنَّاسِ وَلِيَعۡلَمَ ٱللَّهُ ٱلَّذِينَ ءَامَنُواْ وَيَتَّخِذَ مِنكُمۡ شُهَدَآءَۗ وَٱللَّهُ لَا يُحِبُّ ٱلظَّٰلِمِينَ ١٤٠

[1] ಉಹುದ್ ಯುದ್ಧದ ಸಂದರ್ಭ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅಬ್ದುಲ್ಲಾ ಬಿನ್ ಜುಬೈರ್ ರವರ ನಾಯಕತ್ವದಲ್ಲಿ ಬಿಲ್ಲುಗಾರರ ಸೇನೆಯನ್ನು ಒಂದು ಗುಡ್ಡದ ಮೇಲೆ ನಿಲ್ಲಿಸಿದ್ದರು. ಯುದ್ಧದಲ್ಲಿ ಗೆದ್ದರೂ ಸೋತರೂ ನೀವು ಗುಡ್ಡದಿಂದ ಇಳಿದು ಬರಬಾರದೆಂದು ಅವರಿಗೆ ಕಟ್ಟಾಜ್ಞೆ ನೀಡಿದ್ದರು. ಆದರೆ ಯುದ್ಧದ ಆರಂಭದಲ್ಲಿ ಮುಸಲ್ಮಾನರು ವೈರಿಗಳನ್ನು ಹಿಮ್ಮೆಟ್ಟಿಸುವದರ-ಲ್ಲಿ ಯಶಸ್ವಿಯಾಗಿ ಅವರು ಬಿಟ್ಟು ಹೋದ ಯುದ್ಧ ಸಾಮಗ್ರಿಗಳನ್ನು ಸಂಗ್ರಹಿಸಲು ತೊಡಗಿದಾಗ ಗುಡ್ಡ ಮೇಲಿದ್ದ ಬಿಲ್ಲುಗಾರರಲ್ಲಿ ಭಿನ್ನಮತ ಉಂಟಾಯಿತು. ಕೆಲವರು ಹೇಳಿದರು: ಯುದ್ಧದಲ್ಲಿ ಗೆಲ್ಲುವವರೆಗೆ ಮಾತ್ರ ಇಲ್ಲಿ ನಿಲ್ಲಲು ನಮಗೆ ಆಜ್ಞಾಪಿಸಲಾಗಿದೆ. ನಾವು ಈಗ ಗೆದ್ದಿದ್ದೇವೆ ಮತ್ತು ವೈರಿಗಳು ದಿಕ್ಕಾಪಾಲಾಗಿ ಓಡಿದ್ದಾರೆ. ಆದ್ದರಿಂದ ನಾವು ಇನ್ನು ಇಲ್ಲಿ ನಿಲ್ಲಬೇಕಾಗಿಲ್ಲ. ಕೇವಲ ಹತ್ತು ಜನರ ಹೊರತು ಉಳಿದವರೆ-ಲ್ಲರೂ ಗುಡ್ಡದಿಂದ ಇಳಿದು ಹೋದರು. ಗುಡ್ಡದಲ್ಲಿ ಬಿಲ್ಲುಗಾರರು ಇಲ್ಲದಿರುವುದನ್ನು ನೋಡಿದ ವೈರಿಗಳನ್ನು ಆ ಅವಕಾಶವನ್ನು ಚೆನ್ನಾಗಿ ಬಳಸಿ ಅಶ್ವಸೇನೆಯ ಮೂಲಕ ಹಿಂಬದಿಯಿಂದ ಆಕ್ರಮಣ ಮಾಡಿದರು. ಈ ಅನಿರೀಕ್ಷಿತ ಆಕ್ರಮಣದಿಂದ ಮುಸ್ಲಿಮರಿಗೆ ಅನೇಕ ನಾಶ-ನಷ್ಟಗಳು ಸಂಭವಿಸಿದವು. ಈ ವಚನದಲ್ಲಿ ಹೇಳುವುದೇನೆಂದರೆ, ಸತ್ಯನಿಷೇಧಿಗಳಿಗೆ ಕೆಲವೊಮ್ಮೆ ಗೆಲುವು ಸಿಗಬಹುದು. ಆದರೆ ಅದರಿಂದ ನೀವು ಧೃತಿಗೆಡಬಾರದು. ಏಕೆಂದರೆ ಅಂತಿಮ ವಿಜಯವು ಸತ್ಯವಿಶ್ವಾಸಿಗಳಿಗೇ ಆಗಿದೆ.

ಅಲ್ಲಾಹು ಅಕ್ರಮಿಗಳನ್ನು ಇಷ್ಟಪಡುವುದಿಲ್ಲ.

---

141. ಅಲ್ಲಾಹು ಸತ್ಯವಿಶ್ವಾಸಿಗಳನ್ನು ಶುದ್ಧೀಕರಿಸುವುದಕ್ಕಾಗಿ ಮತ್ತು ಸತ್ಯ-ನಿಷೇಧಿಗಳನ್ನು ನಾಶ ಮಾಡುವುದಕ್ಕಾಗಿ.

وَلِيُمَحِّصَ ٱللَّهُ ٱلَّذِينَ ءَامَنُواْ وَيَمۡحَقَ ٱلۡكَٰفِرِينَ ١٤١

---

142. ನಿಮ್ಮಲ್ಲಿ ಯುದ್ಧ ಮಾಡಿದವರು ಯಾರು ಮತ್ತು ಸ್ಥೈರ್ಯವಂತರು ಯಾರೆಂದು ಅಲ್ಲಾಹು ತಿಳಿಯದೆ (ನಿರಾಯಾಸವಾಗಿ) ಸ್ವರ್ಗಕ್ಕೆ ಹೋಗಬಹುದೆಂದು ನೀವು ಭಾವಿಸಿದ್ದೀರಾ?

أَمۡ حَسِبۡتُمۡ أَن تَدۡخُلُواْ ٱلۡجَنَّةَ وَلَمَّا يَعۡلَمِ ٱللَّهُ ٱلَّذِينَ جَٰهَدُواْ مِنكُمۡ وَيَعۡلَمَ ٱلصَّٰبِرِينَ ١٤٢

---

143. ನೀವು ಸಾವನ್ನು ನೇರವಾಗಿ ನೋಡುವುದಕ್ಕೆ ಮೊದಲು ಅದನ್ನು (ಹುತಾತ್ಮತೆಯನ್ನು) ಬಯಸುತ್ತಿದ್ದಿರಿ. ಈಗ ನೀವು ಅದನ್ನು ನಿಮ್ಮ ಕಣ್ಣುಗಳ ಮುಂದೆ ಕಣ್ಣಾರೆ ನೋಡಿದ್ದೀರಿ.

وَلَقَدۡ كُنتُمۡ تَمَنَّوۡنَ ٱلۡمَوۡتَ مِن قَبۡلِ أَن تَلۡقَوۡهُ فَقَدۡ رَأَيۡتُمُوهُ وَأَنتُمۡ تَنظُرُونَ ١٤٣

---

144. ಮುಹಮ್ಮದ್ ಒಬ್ಬ ಸಂದೇಶವಾಹಕರು ಮಾತ್ರ. ಅವರಿಗಿಂತ ಮೊದಲು ಅನೇಕ ಸಂದೇಶವಾಹಕರುಗಳು ಬಂದು ಹೋಗಿದ್ದಾರೆ. ಅವರೇನಾದರೂ ಅಸುನೀಗಿದರೆ ಅಥವಾ ಕೊಲೆಯಾದರೆ, ನೀವು ಹಿಂದಕ್ಕೆ (ಸತ್ಯನಿಷೇಧಕ್ಕೆ) ಮರಳುವಿರಾ? ಯಾರು ಹಿಂದಕ್ಕೆ ಮರಳುತ್ತಾನೋ ಅವನು ಅಲ್ಲಾಹನಿಗೆ ಯಾವುದೇ ತೊಂದರೆ ಮಾಡುವುದಿಲ್ಲ. ಕೃತಜ್ಞರಾಗಿರುವವರಿಗೆ ಅಲ್ಲಾಹು ಸದ್ಯವೇ ಸೂಕ್ತ ಪ್ರತಿಫಲವನ್ನು ನೀಡುವನು.[1]

وَمَا مُحَمَّدٌ إِلَّا رَسُولٞ قَدۡ خَلَتۡ مِن قَبۡلِهِ ٱلرُّسُلُۚ أَفَإِيْن مَّاتَ أَوۡ قُتِلَ ٱنقَلَبۡتُمۡ عَلَىٰٓ أَعۡقَٰبِكُمۡۚ وَمَن يَنقَلِبۡ عَلَىٰ عَقِبَيۡهِ فَلَن يَضُرَّ ٱللَّهَ شَيۡـٔٗاۗ وَسَيَجۡزِي ٱللَّهُ ٱلشَّٰكِرِينَ ١٤٤

---

145. ಅಲ್ಲಾಹನ ಅಪ್ಪಣೆಯಿಲ್ಲದೆ ಯಾವುದೇ ವ್ಯಕ್ತಿಗೂ ಸಾಯಲು ಸಾಧ್ಯವಿಲ್ಲ. ಅದು ನಿಶ್ಚಯಿಸಲಾದ ಒಂದು ಅವಧಿಯಾಗಿದೆ. ಯಾರು ಇಹಲೋಕದ ಪ್ರತಿಫಲವನ್ನು ಬಯಸುತ್ತಾನೋ ಅವನಿಗೆ ನಾವು ಅದನ್ನು ನೀಡುತ್ತೇವೆ. ಯಾರು ಪರಲೋಕದ ಪ್ರತಿಫಲವನ್ನು ಬಯಸುತ್ತಾನೋ ಅವನಿಗೆ ನಾವು ಅದನ್ನು ನೀಡುತ್ತೇವೆ. ಕೃತಜ್ಞರಾಗಿರುವವರಿಗೆ ಅಲ್ಲಾಹು ಸದ್ಯವೇ ಸೂಕ್ತ ಪ್ರತಿಫಲವನ್ನು ನೀಡುತ್ತಾನೆ.

وَمَا كَانَ لِنَفۡسٍ أَن تَمُوتَ إِلَّا بِإِذۡنِ ٱللَّهِ كِتَٰبٗا مُّؤَجَّلٗاۗ وَمَن يُرِدۡ ثَوَابَ ٱلدُّنۡيَا نُؤۡتِهِۦ مِنۡهَا وَمَن يُرِدۡ ثَوَابَ ٱلۡأٓخِرَةِ نُؤۡتِهِۦ مِنۡهَاۚ وَسَنَجۡزِي ٱلشَّٰكِرِينَ ١٤٥

---

146. ಎಷ್ಟೋ ಪ್ರವಾದಿಗಳಿಗೆ ಜೊತೆಯಾಗಿ ನಿಂತು ಅಲ್ಲಾಹನ ಎಷ್ಟೋ ದಾಸರು ಯುದ್ಧ ಮಾಡಿದ್ದಾರೆ. ಅಲ್ಲಾಹನ ಮಾರ್ಗದಲ್ಲಿ ಎದುರಿಸಬೇಕಾಗಿ ಬಂದ ತೊಂದರೆಗಳಿಂದ ಅವರು

وَكَأَيِّن مِّن نَّبِيّٖ قَٰتَلَ مَعَهُۥ رِبِّيُّونَ كَثِيرٞ فَمَا وَهَنُواْ لِمَآ أَصَابَهُمۡ فِي سَبِيلِ ٱللَّهِ وَمَا ضَعُفُواْ وَمَا ٱسۡتَكَانُواْۗ وَٱللَّهُ يُحِبُّ ٱلصَّٰبِرِينَ ١٤٦

---

[1] ಉಹುದ್ ಯುದ್ಧದಲ್ಲಿ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಕೊಲೆಯಾದರೆಂದು ವೈರಿಗಳನ್ನು ವದಂತಿ ಹಬ್ಬಿಸಿದರು. ಮುಸ್ಲಿಮರಲ್ಲಿ ಕೆಲವರು ಈ ವದಂತಿಯನ್ನು ನಂಬಿ ಸಂಪೂರ್ಣ ನಿರಾಶರಾಗಿ ಯುದ್ಧದಿಂದ ಹಿಂದೆ ಸರಿದರು. ಇವರ ಬಗ್ಗೆ ಈ ವಚನವು ಅವತೀರ್ಣವಾಯಿತು. ಪ್ರವಾದಿಗಳು ಮರಣಹೊಂದುವುದು ಅಥವಾ ವೈರಿಗಳು ಪ್ರವಾದಿಗಳನ್ನು ಕೊಲೆ ಮಾಡುವುದು ಹೊಸದೇನಲ್ಲ. ಹಿಂದೆಯೂ ಅನೇಕ ಪ್ರವಾದಿಗಳು ವೈರಿಗಳ ಕೈಯಿಂದ ಕೊಲೆಯಾಗಿದ್ದಾರೆ. ಅದೇ ರೀತಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅಸುನೀಗಿದರೆ ಅಥವಾ ಕೊಲೆಯಾದರೆ ನೀವು ನಿಮ್ಮ ಧರ್ಮದಿಂದ ಹಿಂದೆ ಸರಿಯುತ್ತೀರಾ? ಯಾರಾದರೂ ಹಿಂದೆ ಸರಿದರೆ ಅದರಿಂದ ಅಲ್ಲಾಹನಿಗೇನೂ ನಷ್ಟವಿಲ್ಲ.

ಧೃತಿಗೆಡಲಿಲ್ಲ, ದುರ್ಬಲರಾಗಲಿಲ್ಲ ಮತ್ತು ಮಣಿಯಲಿಲ್ಲ. ಅಲ್ಲಾಹು ಸ್ಥೈರ್ಯವಂತರನ್ನು ಪ್ರೀತಿಸುತ್ತಾನೆ.

---

**147.** ಅವರ ಮಾತುಗಳು ಇದಲ್ಲದೆ ಬೇರೇನೂ ಆಗಿರಲಿಲ್ಲ: “ಓ ನಮ್ಮ ಪರಿಪಾಲಕನೇ! ನಮ್ಮ ಪಾಪಗಳನ್ನು ಮತ್ತು ನಮ್ಮ ಕಾರ್ಯಗಳಲ್ಲಿ ಸಂಭವಿಸಿದ ಅತಿರೇಕಗಳನ್ನು ಕ್ಷಮಿಸು, ನಮ್ಮ ಪಾದಗಳನ್ನು ದೃಢವಾಗಿ ನಿಲ್ಲಿಸು ಮತ್ತು ಸತ್ಯನಿಷೇಧಿಗಳಾದ ಜನರ ವಿರುದ್ಧ ನಮಗೆ ಸಹಾಯ ಮಾಡು.”

وَمَا كَانَ قَوۡلَهُمۡ إِلَّآ أَن قَالُواْ رَبَّنَا ٱغۡفِرۡ لَنَا ذُنُوبَنَا وَإِسۡرَافَنَا فِيٓ أَمۡرِنَا وَثَبِّتۡ أَقۡدَامَنَا وَٱنصُرۡنَا عَلَى ٱلۡقَوۡمِ ٱلۡكَٰفِرِينَ ١٤٧

---

**148.** ಆದ್ದರಿಂದ ಅಲ್ಲಾಹು ಅವರಿಗೆ ಇಹಲೋಕದ ಪ್ರತಿಫಲವನ್ನು ಮತ್ತು ಪರಲೋಕದ ಅತ್ಯುತ್ತಮ ಪ್ರತಿಫಲವನ್ನು ನೀಡಿದನು. ಅಲ್ಲಾಹು ಒಳಿತು ಮಾಡುವವರನ್ನು ಪ್ರೀತಿಸುತ್ತಾನೆ.

فَـَٔاتَىٰهُمُ ٱللَّهُ ثَوَابَ ٱلدُّنۡيَا وَحُسۡنَ ثَوَابِ ٱلۡأٓخِرَةِۗ وَٱللَّهُ يُحِبُّ ٱلۡمُحۡسِنِينَ ١٤٨

---

**149.** ಓ ಸತ್ಯವಿಶ್ವಾಸಿಗಳೇ! ನೀವು ಸತ್ಯನಿಷೇಧಿಗಳನ್ನು ಅನುಸರಿಸಿದರೆ, ಅವರು ನಿಮ್ಮನ್ನು ಹಿಂದಕ್ಕೆ (ಸತ್ಯನಿಷೇಧಕ್ಕೆ) ಮರಳಿಸುತ್ತಾರೆ. ನಂತರ ನೀವು ನಷ್ಟಹೊಂದಿದವರಾಗಿ ಬಿಡುವಿರಿ.

يَٰٓأَيُّهَا ٱلَّذِينَ ءَامَنُوٓاْ إِن تُطِيعُواْ ٱلَّذِينَ كَفَرُواْ يَرُدُّوكُمۡ عَلَىٰٓ أَعۡقَٰبِكُمۡ فَتَنقَلِبُواْ خَٰسِرِينَ ١٤٩

---

**150.** ಅಲ್ಲ, ವಾಸ್ತವವಾಗಿ ಅಲ್ಲಾಹನೇ ನಿಮ್ಮ ರಕ್ಷಕನು. ಅವನು ಸಹಾಯ ಮಾಡುವವರಲ್ಲಿ ಅತ್ಯುತ್ತಮನು.

بَلِ ٱللَّهُ مَوۡلَىٰكُمۡۖ وَهُوَ خَيۡرُ ٱلنَّٰصِرِينَ ١٥٠

---

**151.** ಅಲ್ಲಾಹು ಯಾವುದೇ ಸಾಕ್ಷ್ಯಾಧಾರಗಳನ್ನು ಅವತೀರ್ಣಗೊಳಿಸದ ವಸ್ತುಗಳನ್ನು ಅವನಿಗೆ ಸಹಭಾಗಿಗಳನ್ನಾಗಿ ಮಾಡಿದ ಕಾರಣ ನಾವು ಸತ್ಯನಿಷೇಧಿಗಳ ಹೃದಯಗಳಲ್ಲಿ ಭೀತಿಯನ್ನು ಹುಟ್ಟಿಸುವೆವು. ಅವರ ವಾಸಸ್ಥಳವು ನರಕವಾಗಿದೆ. ಅಕ್ರಮಿಗಳ ವಾಸಸ್ಥಳವು ಬಹಳ ನಿಕೃಷ್ಟವಾಗಿದೆ!

سَنُلۡقِي فِي قُلُوبِ ٱلَّذِينَ كَفَرُواْ ٱلرُّعۡبَ بِمَآ أَشۡرَكُواْ بِٱللَّهِ مَا لَمۡ يُنَزِّلۡ بِهِۦ سُلۡطَٰنٗاۖ وَمَأۡوَىٰهُمُ ٱلنَّارُۖ وَبِئۡسَ مَثۡوَى ٱلظَّٰلِمِينَ ١٥١

---

**152.** ಅಲ್ಲಾಹನ ಅಪ್ಪಣೆಯಿಂದ ನೀವು ಅವರನ್ನು ಕೊಲ್ಲುತ್ತಿರುವಾಗ ಅಲ್ಲಾಹು ನಿಮಗೆ ನೀಡಿದ ವಾಗ್ದಾನವನ್ನು ಖಂಡಿತ ನೆರವೇರಿಸಿದ್ದನು. ಎಲ್ಲಿಯವರೆಗೆಂದರೆ, ನೀವು ನಿಮ್ಮ ಕೆಲಸದಲ್ಲಿ ವಿಫಲರಾಗಿ ಪರಸ್ಪರ ತರ್ಕಿಸುವ ಮತ್ತು ನೀವು ಇಷ್ಟಪಡುವುದನ್ನು ಅಲ್ಲಾಹು ನಿಮಗೆ ತೋರಿಸಿದ ಬಳಿಕವೂ ನೀವು ಆಜ್ಞೋಲ್ಲಂಘನೆ ಮಾಡುವ ತನಕ. ನಿಮ್ಮಲ್ಲಿ ಕೆಲವರು ಇಹಲೋಕವನ್ನು ಬಯಸುತ್ತಿದ್ದರು ಮತ್ತು ಇತರ ಕೆಲವರು ಪರಲೋಕವನ್ನು ಬಯಸುತ್ತಿದ್ದರು. ನಂತರ ನಿಮ್ಮನ್ನು ಪರೀಕ್ಷಿಸುವುದಕ್ಕಾಗಿ ಅಲ್ಲಾಹು ನಿಮ್ಮನ್ನು ಅವರಿಂದ (ವೈರಿಗಳಿಂದ) ತಿರುಗಿಸಿದನು. ಅಲ್ಲಾಹು ನಿಮ್ಮನ್ನು ಕ್ಷಮಿಸಿದ್ದಾನೆ. ಅಲ್ಲಾಹು ಸತ್ಯವಿಶ್ವಾಸಿಗಳ ಮೇಲೆ ಮಹಾ ಔದಾರ್ಯವುಳ್ಳವನಾಗಿದ್ದಾನೆ.

وَلَقَدۡ صَدَقَكُمُ ٱللَّهُ وَعۡدَهُۥٓ إِذۡ تَحُسُّونَهُم بِإِذۡنِهِۦۖ حَتَّىٰٓ إِذَا فَشِلۡتُمۡ وَتَنَٰزَعۡتُمۡ فِي ٱلۡأَمۡرِ وَعَصَيۡتُم مِّنۢ بَعۡدِ مَآ أَرَىٰكُم مَّا تُحِبُّونَۚ مِنكُم مَّن يُرِيدُ ٱلدُّنۡيَا وَمِنكُم مَّن يُرِيدُ ٱلۡأٓخِرَةَۚ ثُمَّ صَرَفَكُمۡ عَنۡهُمۡ لِيَبۡتَلِيَكُمۡۖ وَلَقَدۡ عَفَا عَنكُمۡۗ وَٱللَّهُ ذُو فَضۡلٍ عَلَى ٱلۡمُؤۡمِنِينَ ١٥٢

إِذۡ تُصۡعِدُونَ وَلَا تَلۡوُۥنَ عَلَىٰٓ أَحَدٖ وَٱلرَّسُولُ يَدۡعُوكُمۡ فِيٓ أُخۡرَىٰكُمۡ فَأَثَٰبَكُمۡ غَمَّۢا بِغَمّٖ لِّكَيۡلَا تَحۡزَنُواْ عَلَىٰ مَا فَاتَكُمۡ وَلَا مَآ أَصَٰبَكُمۡۗ وَٱللَّهُ خَبِيرُۢ بِمَا تَعۡمَلُونَ ﴿١٥٣﴾

153. ನೀವು (ಪರ್ವತವನ್ನು) ಏರುತ್ತಾ ಯಾರನ್ನೂ ತಿರುಗಿ ನೋಡದೆ (ಪಲಾಯನ ಮಾಡುತ್ತಿದ್ದ) ಸಂದರ್ಭ. ಸಂದೇಶವಾಹಕರು ಹಿಂದಿನಿಂದ ನಿಮ್ಮನ್ನು ಕೂಗಿ ಕರೆಯುತ್ತಿದ್ದರು. ಆಗ ಅಲ್ಲಾಹು ನಿಮಗೆ ಬಳಲಿಕೆಯ ಮೇಲೆ ಬಳಲಿಕೆಯನ್ನು ಬಳುವಳಿಯಾಗಿ ನೀಡಿದನು. ನಿಮಗೆ ಕೈತಪ್ಪಿ ಹೋದ ವಿಜಯದ ಬಗ್ಗೆ ಮತ್ತು ನಿಮಗೆ ಸಂಭವಿಸಿದ ಅನಾಹುತದ ಬಗ್ಗೆ ನೀವು ಸಂಕಟಪಡದಿರುವುದಕ್ಕಾಗಿ. ಅಲ್ಲಾಹು ನೀವು ಮಾಡುತ್ತಿರುವ ಕರ್ಮಗಳನ್ನು ಸೂಕ್ಷ್ಮವಾಗಿ ತಿಳಿಯುತ್ತಾನೆ.

ثُمَّ أَنزَلَ عَلَيۡكُم مِّنۢ بَعۡدِ ٱلۡغَمِّ أَمَنَةٗ نُّعَاسٗا يَغۡشَىٰ طَآئِفَةٗ مِّنكُمۡۖ وَطَآئِفَةٞ قَدۡ أَهَمَّتۡهُمۡ أَنفُسُهُمۡ يَظُنُّونَ بِٱللَّهِ غَيۡرَ ٱلۡحَقِّ ظَنَّ ٱلۡجَٰهِلِيَّةِۖ يَقُولُونَ هَل لَّنَا مِنَ ٱلۡأَمۡرِ مِن شَيۡءٖۗ قُلۡ إِنَّ ٱلۡأَمۡرَ كُلَّهُۥ لِلَّهِۗ يُخۡفُونَ فِيٓ أَنفُسِهِم مَّا لَا يُبۡدُونَ لَكَۖ يَقُولُونَ لَوۡ كَانَ لَنَا مِنَ ٱلۡأَمۡرِ شَيۡءٞ مَّا قُتِلۡنَا هَٰهُنَاۗ قُل لَّوۡ كُنتُمۡ فِي بُيُوتِكُمۡ لَبَرَزَ ٱلَّذِينَ كُتِبَ عَلَيۡهِمُ ٱلۡقَتۡلُ إِلَىٰ مَضَاجِعِهِمۡۖ وَلِيَبۡتَلِيَ ٱللَّهُ مَا فِي صُدُورِكُمۡ وَلِيُمَحِّصَ مَا فِي قُلُوبِكُمۡۚ وَٱللَّهُ عَلِيمُۢ بِذَاتِ ٱلصُّدُورِ ﴿١٥٤﴾

154. ಅನಂತರ, ಆ ಬಳಲಿಕೆಯ ನಂತರ ಅಲ್ಲಾಹು ನಿಮಗೆ ನಿರ್ಭಯತೆಯ ತೂಕಡಿಕೆಯನ್ನು ನೀಡಿದನು. ಅದು ನಿಮ್ಮಲ್ಲಿ ಒಂದು ಗುಂಪನ್ನು ಆವರಿಸುತ್ತಿತ್ತು. ಇನ್ನೊಂದು ಗುಂಪು ಸ್ವಯಂ ಅವರ ಬಗ್ಗೆಯೇ ಚಿಂತಿತರಾಗಿದ್ದರು. ಅವರು ಅಲ್ಲಾಹನ ಬಗ್ಗೆ ಸತ್ಯಕ್ಕೆ ದೂರವಾದ ಅಜ್ಞಾನಕಾಲದ ಭಾವನೆಗಳನ್ನು ಇಟ್ಟುಕೊಂಡಿದ್ದರು.[1] ಅವರು ಕೇಳುತ್ತಿದ್ದರು: "ಆಜ್ಞೆಯಲ್ಲಿ ನಮಗೆ ಯಾವುದೇ ಪಾಲಿಲ್ಲವೇ?" ಹೇಳಿರಿ: "ನಿಶ್ಚಯವಾಗಿಯೂ ಆಜ್ಞೆಯು ಸಂಪೂರ್ಣವಾಗಿ ಅಲ್ಲಾಹನಿಗೆ ಸೇರಿದೆ." ನಿಮ್ಮ ಮುಂದೆ ಬಹಿರಂಗಪಡಿಸದ ಬೇರೇನೋ ವಿಚಾರಗಳನ್ನು ಅವರು ತಮ್ಮ ಮನದಲ್ಲಿ ಬಚ್ಚಿಡುತ್ತಿದ್ದರು. ಅವರು ಹೇಳುತ್ತಿದ್ದರು: "ಆಜ್ಞೆಯಲ್ಲಿ ನಮಗೇನಾದರೂ ಪಾಲಿರುತ್ತಿದ್ದರೆ ನಾವಿಲ್ಲಿ ಹತ್ಯೆಯಾಗಿ ಬೀಳುತ್ತಿರಲಿಲ್ಲ." ಹೇಳಿರಿ: "ನೀವು ನಿಮ್ಮ ಮನೆಗಳಲ್ಲಿದ್ದರೂ ಸಹ ಕೊಲೆಯಾಗಬೇಕೆಂಬ ವಿಧಿಯಿರುವವರು ಅವರು ಕೊಲೆಯಾಗಿ ಬೀಳುವ ಸ್ಥಳಗಳಿಗೆ ಸ್ವಯಂ ಹೊರಟು ಬರುತ್ತಿದ್ದರು." ಇದು ನಿಮ್ಮ ಎದೆಗಳಲ್ಲಿರುವುದನ್ನು ಅಲ್ಲಾಹು ಪರೀಕ್ಷಿಸುವುದಕ್ಕಾಗಿದೆ ಮತ್ತು ನಿಮ್ಮ ಹೃದಯಗಳಲ್ಲಿರುವುದನ್ನು ಶುದ್ಧೀಕರಿಸುವುದಕ್ಕಾಗಿದೆ. ಅಲ್ಲಾಹು ಎದೆಗಳೊಳಗಿರುವುದನ್ನು ತಿಳಿಯುತ್ತಾನೆ.

إِنَّ ٱلَّذِينَ تَوَلَّوۡاْ مِنكُمۡ يَوۡمَ ٱلۡتَقَى ٱلۡجَمۡعَانِ إِنَّمَا ٱسۡتَزَلَّهُمُ ٱلشَّيۡطَٰنُ بِبَعۡضِ مَا كَسَبُواْۖ وَلَقَدۡ عَفَا ٱللَّهُ عَنۡهُمۡۗ

155. (ಉಹುದ್ ಯುದ್ಧದಲ್ಲಿ) ಎರಡು ಬಣಗಳು ಮುಖಾಮುಖಿಯಾದ ದಿನದಂದು ನಿಮ್ಮ ಪೈಕಿ ಬೆನ್ನು ತೋರಿಸಿ ಓಡಿದವರು ಯಾರೋ—ಅವರು ಮಾಡಿದ ಕೆಲವು ದುಷ್ಕೃತ್ಯಗಳ

[1] ಉಹುದ್ ಯುದ್ಧದ ನಂತರ ಅಲ್ಲಾಹು ಮುಸಲ್ಮಾನರ ಮೇಲೆ ದಯೆ ತೋರಿ ಅವರಿಗೆ ಸುಖವಾದ ನಿದ್ದೆಯನ್ನು ಕರುಣಿಸಿದನು. ಇನ್ನೊಂದು ಕಡೆ ಕಪಟವಿಶ್ವಾಸಿಗಳು ಅವರ ಬಗ್ಗೆಯೇ ಚಿಂತಿತರಾಗಿದ್ದರು. ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಕೆಲವು ನಿರ್ಣಯಗಳು ಸರಿಯಿಲ್ಲ; ಅವರು ಯಾವ ಧರ್ಮದ ಕಡೆಗೆ ಜನರನ್ನು ಕರೆಯುತ್ತಿದ್ದಾರೋ ಆ ಧರ್ಮಕ್ಕೆ ಭವಿಷ್ಯವಿಲ್ಲ. ಅವರಿಗೆ ಅಲ್ಲಾಹನ ಕಡೆಯ ಸಹಾಯವಿಲ್ಲ ಎಂದು ಅವರು ಹೇಳುತ್ತಿದ್ದರು.

إِنَّ ٱللَّهَ غَفُورٌ حَلِيمٌ ﴿١٥٥﴾

ಕಾರಣದಿಂದ ಶೈತಾನನು ಅವರನ್ನು ಜಾರಿಕೊಳ್ಳುವಂತೆ ಮಾಡಿದ್ದನು. ಅಲ್ಲಾಹು ಅವರನ್ನು ಕ್ಷಮಿಸಿದ್ದಾನೆ. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ಸಹಿಷ್ಣುತೆಯುಳ್ಳವನಾಗಿದ್ದಾನೆ.

---

يَـٰٓأَيُّهَا ٱلَّذِينَ ءَامَنُوا۟ لَا تَكُونُوا۟ كَٱلَّذِينَ كَفَرُوا۟ وَقَالُوا۟ لِإِخْوَٰنِهِمْ إِذَا ضَرَبُوا۟ فِى ٱلْأَرْضِ أَوْ كَانُوا۟ غُزًّى لَّوْ كَانُوا۟ عِندَنَا مَا مَاتُوا۟ وَمَا قُتِلُوا۟ لِيَجْعَلَ ٱللَّهُ ذَٰلِكَ حَسْرَةً فِى قُلُوبِهِمْ ۗ وَٱللَّهُ يُحْىِۦ وَيُمِيتُ ۗ وَٱللَّهُ بِمَا تَعْمَلُونَ بَصِيرٌ ﴿١٥٦﴾

156. ಓ ಸತ್ಯವಿಶ್ವಾಸಿಗಳೇ! ಸತ್ಯವನ್ನು ನಿಷೇಧಿಸಿದವರು ಮತ್ತು ತಮ್ಮ ಸಹೋದರರು ಪ್ರಯಾಣ ಹೊರಟಾಗ ಅಥವಾ ಯುದ್ಧಕ್ಕೆ ಹೊರಟಾಗ, "ಇವರು ನಮ್ಮ ಬಳಿಯಿರುತ್ತಿದ್ದರೆ ಸಾಯುತ್ತಿರಲಿಲ್ಲ ಮತ್ತು ಕೊಲೆಯಾಗುತ್ತಿರಲಿಲ್ಲ" ಎಂದು ಹೇಳುವವರಂತೆ ನೀವಾಗಬೇಡಿ. ಈ ಕಲ್ಪನೆಯನ್ನು ಅಲ್ಲಾಹು ಅವರ ಹೃದಯಗಳಲ್ಲಿನ ವ್ಯಥೆಗೆ ಕಾರಣವಾಗಿ ಮಾಡುತ್ತಾನೆ. ಅಲ್ಲಾಹನೇ ಜೀವ ಮತ್ತು ಮರಣವನ್ನು ನೀಡುವವನು. ಅಲ್ಲಾಹು ನೀವು ಮಾಡುತ್ತಿರುವ ಕರ್ಮಗಳನ್ನು ನೋಡುತ್ತಿದ್ದಾನೆ.

---

وَلَئِن قُتِلْتُمْ فِى سَبِيلِ ٱللَّهِ أَوْ مُتُّمْ لَمَغْفِرَةٌ مِّنَ ٱللَّهِ وَرَحْمَةٌ خَيْرٌ مِّمَّا يَجْمَعُونَ ﴿١٥٧﴾

157. ನೀವು ಅಲ್ಲಾಹನ ಮಾರ್ಗದಲ್ಲಿ ಕೊಲೆಯಾದರೆ ಅಥವಾ ಸಾವನ್ನಪ್ಪಿದರೆ ಅಲ್ಲಾಹನ ಕಡೆಯ ಕ್ಷಮೆ ಮತ್ತು ದಯೆಯು ಅವರು ಸಂಗ್ರಹಿಸಿಡುವ ಎಲ್ಲಾ ವಸ್ತುಗಳಿಗಿಂತಲೂ ಶ್ರೇಷ್ಠವಾಗಿದೆ.

---

وَلَئِن مُّتُّمْ أَوْ قُتِلْتُمْ لَإِلَى ٱللَّهِ تُحْشَرُونَ ﴿١٥٨﴾

158. ನೀವು ಕೊಲೆಯಾದರೂ ಅಥವಾ ಸಾವನ್ನಪ್ಪಿದರೂ ನಿಶ್ಚಯವಾಗಿಯೂ ನಿಮ್ಮನ್ನು ಅಲ್ಲಾಹನ ಬಳಿಗೇ ಒಟ್ಟುಗೂಡಿಸಲಾಗುವುದು.

---

فَبِمَا رَحْمَةٍ مِّنَ ٱللَّهِ لِنتَ لَهُمْ ۖ وَلَوْ كُنتَ فَظًّا غَلِيظَ ٱلْقَلْبِ لَٱنفَضُّوا۟ مِنْ حَوْلِكَ ۖ فَٱعْفُ عَنْهُمْ وَٱسْتَغْفِرْ لَهُمْ وَشَاوِرْهُمْ فِى ٱلْأَمْرِ ۖ فَإِذَا عَزَمْتَ فَتَوَكَّلْ عَلَى ٱللَّهِ ۚ إِنَّ ٱللَّهَ يُحِبُّ ٱلْمُتَوَكِّلِينَ ﴿١٥٩﴾

159. (ಓ ಪ್ರವಾದಿಯವರೇ!) ಅಲ್ಲಾಹನ ಕಡೆಯ ದಯೆಯಿಂದಲೇ ನೀವು ಅವರೊಡನೆ ನಯವಾಗಿ ವರ್ತಿಸುತ್ತಿದ್ದೀರಿ. ನೀವು ಒರಟನೋ ಕಠೋರ ಹೃದಯಿಯೋ ಆಗಿದ್ದರೆ ಅವರು ನಿಮ್ಮ ಬಳಿಯಿಂದ ಚದುರಿಬಿಡುತ್ತಿದ್ದರು. ಆದ್ದರಿಂದ ಅವರನ್ನು ಕ್ಷಮಿಸಿರಿ ಮತ್ತು ಅವರಿಗಾಗಿ (ಅಲ್ಲಾಹನಲ್ಲಿ) ಕ್ಷಮೆಯಾಚಿಸಿರಿ. ಕಾರ್ಯ-ನಿರ್ವಹಣೆಯ ಬಗ್ಗೆ ಅವರೊಡನೆ ಸಮಾಲೋಚನೆ ಮಾಡಿರಿ. ನಂತರ ನೀವು ದೃಢ ನಿರ್ಧಾರ ಕೈಗೊಂಡರೆ ಅಲ್ಲಾಹನಲ್ಲಿ ಭರವಸೆಯಿಡಿರಿ. ನಿಶ್ಚಯವಾಗಿಯೂ ಅಲ್ಲಾಹನ ಮೇಲೆ ಭರವಸೆ-ಯಿಡುವವರನ್ನು ಅಲ್ಲಾಹು ಇಷ್ಟಪಡುತ್ತಾನೆ.

---

إِن يَنصُرْكُمُ ٱللَّهُ فَلَا غَالِبَ لَكُمْ ۖ وَإِن يَخْذُلْكُمْ فَمَن ذَا ٱلَّذِى يَنصُرُكُم مِّنۢ بَعْدِهِۦ ۗ وَعَلَى ٱللَّهِ فَلْيَتَوَكَّلِ ٱلْمُؤْمِنُونَ ﴿١٦٠﴾

160. ಅಲ್ಲಾಹು ನಿಮಗೆ ಸಹಾಯ ಮಾಡಿದರೆ ನಿಮ್ಮನ್ನು ಸೋಲಿಸಲು ಯಾರಿಗೂ ಸಾಧ್ಯವಿಲ್ಲ. ಆದರೆ ಅವನೇನಾದರೂ ನಿಮ್ಮನ್ನು ಕೈಬಿಟ್ಟರೆ, ಅವನ ನಂತರ ನಿಮಗೆ ಸಹಾಯ ಮಾಡುವವರು ಯಾರು? ಸತ್ಯವಿಶ್ವಾಸಿಗಳು ಅಲ್ಲಾಹನಲ್ಲಿಯೇ ಭರವಸೆಯಿಡಲಿ.

161. ಪ್ರವಾದಿಯು ಮೋಸ ಮಾಡುವುದು ಅಸಂಭವ.[1] ಯಾರು ಮೋಸ ಮಾಡುತ್ತಾನೋ ಅವನು ಪುನರುತ್ಥಾನ ದಿನದಂದು ತಾನು ಮಾಡಿದ ಮೋಸದೊಂದಿಗೆ ಬರುತ್ತಾನೆ. ನಂತರ ಪ್ರತಿಯೊಬ್ಬನಿಗೂ ಅವನು ಮಾಡಿದ ಕರ್ಮದ ಫಲವನ್ನು ಪೂರ್ಣವಾಗಿ ನೀಡಲಾಗುವುದು. ಅವರಿಗೆ ಯಾವುದೇ ಅನ್ಯಾಯವಾಗುವುದಿಲ್ಲ.

وَمَا كَانَ لِنَبِيٍّ أَن يَغُلَّۚ وَمَن يَغۡلُلۡ يَأۡتِ بِمَا غَلَّ يَوۡمَ ٱلۡقِيَٰمَةِۚ ثُمَّ تُوَفَّىٰ كُلُّ نَفۡسٖ مَّا كَسَبَتۡ وَهُمۡ لَا يُظۡلَمُونَ ١٦١

162. ಅಲ್ಲಾಹನ ಸಂಪ್ರೀತಿಯನ್ನು ಅನುಸರಿಸುವವನು ಅಲ್ಲಾಹನ ಕೋಪಕ್ಕೆ ಪಾತ್ರನಾಗಿ ನರಕವನ್ನು ವಾಸಸ್ಥಳವಾಗಿ ಮಾಡಿಕೊಂಡವನಂತೆ ಆಗುವನೇ? ಆ ಗಮ್ಯಸ್ಥಾನವು ಬಹಳ ನಿಕೃಷ್ಟವಾಗಿದೆ.

أَفَمَنِ ٱتَّبَعَ رِضۡوَٰنَ ٱللَّهِ كَمَنۢ بَآءَ بِسَخَطٖ مِّنَ ٱللَّهِ وَمَأۡوَىٰهُ جَهَنَّمُۖ وَبِئۡسَ ٱلۡمَصِيرُ ١٦٢

163. ಅವರಿಗೆ ಅಲ್ಲಾಹನ ಬಳಿ ವಿವಿಧ ಪದವಿಗಳಿವೆ. ಅಲ್ಲಾಹು ಅವರು ಮಾಡುತ್ತಿರುವ ಕರ್ಮಗಳನ್ನು ನೋಡುತ್ತಿದ್ದಾನೆ.

هُمۡ دَرَجَٰتٌ عِندَ ٱللَّهِۗ وَٱللَّهُ بَصِيرُۢ بِمَا يَعۡمَلُونَ ١٦٣

164. ಅಲ್ಲಾಹನ ವಚನಗಳನ್ನು ಓದಿಕೊಡುವ, ಅವರನ್ನು ಶುದ್ಧೀಕರಿಸುವ, ಅವರಿಗೆ ಗ್ರಂಥ ಮತ್ತು ವಿವೇಕವನ್ನು ಕಲಿಸಿಕೊಡುವ ಒಬ್ಬ ಸಂದೇಶವಾಹಕರನ್ನು ಅವರಿಂದಲೇ ಅವರಿಗೆ ಕಳುಹಿಸುವ ಮೂಲಕ ನಿಶ್ಚಯವಾಗಿಯೂ ಅಲ್ಲಾಹು ಸತ್ಯವಿಶ್ವಾಸಿಗಳಗೆ ಮಹಾ ಉಪಕಾರವನ್ನು ಮಾಡಿದ್ದಾನೆ. ಇದಕ್ಕೆ ಮೊದಲು ಅವರು ಸ್ಪಷ್ಟ ದುರ್ಮಾರ್ಗದಲ್ಲಿದ್ದರು.

لَقَدۡ مَنَّ ٱللَّهُ عَلَى ٱلۡمُؤۡمِنِينَ إِذۡ بَعَثَ فِيهِمۡ رَسُولٗا مِّنۡ أَنفُسِهِمۡ يَتۡلُواْ عَلَيۡهِمۡ ءَايَٰتِهِۦ وَيُزَكِّيهِمۡ وَيُعَلِّمُهُمُ ٱلۡكِتَٰبَ وَٱلۡحِكۡمَةَ وَإِن كَانُواْ مِن قَبۡلُ لَفِي ضَلَٰلٖ مُّبِينٍ ١٦٤

165. (ಉಹುದ್ ಯುದ್ಧದ ಸಂದರ್ಭ) ನಿಮಗೊಂದು ಅನಾಹುತ ಸಂಭವಿಸಿತು. ಆದರೆ ನೀವು ಶತ್ರುಗಳಿಗೆ (ಬದ್ರ್ ಯುದ್ಧದ ಸಂದರ್ಭ) ಅದರ ಇಮ್ಮಡಿ ಅನಾಹುತವನ್ನು ಮಾಡಿದ್ದೀರಿ. ಹಾಗಿದ್ದೂ ಸಹ ನೀವು "ಇದು ಎಲ್ಲಿಂದ ಸಂಭವಿಸಿತು?" ಎಂದು ಕೇಳುತ್ತಿದ್ದೀರಿ! ಹೇಳಿರಿ: "ಅದು ನಿಮ್ಮ ತಪ್ಪಿನಿಂದಲೇ ಸಂಭವಿಸಿದೆ." ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

أَوَلَمَّآ أَصَٰبَتۡكُم مُّصِيبَةٞ قَدۡ أَصَبۡتُم مِّثۡلَيۡهَا قُلۡتُمۡ أَنَّىٰ هَٰذَاۖ قُلۡ هُوَ مِنۡ عِندِ أَنفُسِكُمۡۗ إِنَّ ٱللَّهَ عَلَىٰ كُلِّ شَيۡءٖ قَدِيرٞ ١٦٥

[1] ಉಹುದ್ ಯುದ್ಧದ ಆರಂಭದಲ್ಲಿ ವೈರಿಗಳು ದಿಕ್ಕಾಪಾಲಾಗಿ ಓಡಿ ಮುಸಲ್ಮಾನರಿಗೆ ಗೆಲುವು ಸಿಕ್ಕಿದಾಗ ಅವರು ವೈರಿಗಳು ಬಿಟ್ಟುಹೋದ ಯುದ್ಧ ಸಾಮಗ್ರಿಗಳನ್ನು ಸಂಗ್ರಹಿಸತೊಡಗಿದರು. ಆಗ ಗುಡ್ಡ ಮೇಲಿದ್ದ ಮುಸ್ಲಿಮರಿಗೆ ನಾವು ಹೋಗಿ ಯುದ್ಧ ಸಾಮಗ್ರಿಗಳನ್ನು ಸಂಗ್ರಹಿಸದಿದ್ದರೆ ಅವೆಲ್ಲವೂ ಅವರ ಪಾಲಾಗಿ ನಮಗೆ ಏನೂ ದೊರೆಯುವುದಿಲ್ಲ ಎಂದು ಭಾವಿಸಿ ಗುಡ್ಡದ ಮೇಲಿಂದ ಇಳಿದು ಬಂದು ಯುದ್ಧ ಸಾಮಗ್ರಿಗಳನ್ನು ಸಂಗ್ರಹಿಸತೊಡಗಿದರು. ಇವರ ಈ ಭಾವನೆಯನ್ನು ಈ ವಚನದಲ್ಲಿ ತಿದ್ದಲಾಗಿದೆ. ಅಂದರೆ ಈ ಯುದ್ಧವು ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ನಾಯಕತ್ವದಲ್ಲಿ ನಡೆಯುತ್ತಿದೆ. ಯುದ್ಧದಲ್ಲಿ ದೊರೆತ ಸಾಮಗ್ರಿಗಳನ್ನು ಅವರು ಯೋಧರ ನಡುವೆ ನ್ಯಾಯಯುತವಾಗಿ ಪಾಲು ಮಾಡುವುದಿಲ್ಲ ಎಂದು ನೀವು ಭಾವಿಸುತ್ತೀರಾ? ನಿಮ್ಮ ಭಾವನೆ ತಪ್ಪು. ಒಬ್ಬ ಪ್ರವಾದಿ ಯಾವತ್ತೂ ಮೋಸ ಮಾಡುವುದು ಸಾಧ್ಯವಿಲ್ಲ.

166. (ಉಹುದ್ ಯುದ್ಧದಲ್ಲಿ) ಎರಡು ಬಣಗಳು ಮುಖಾಮುಖಿಯಾದ ದಿನದಂದು ನಿಮಗೆ ಸಂಭವಿಸಿದ ಅನಾಹುತವು ಅಲ್ಲಾಹನ ಅಪ್ಪಣೆಯಿಂದಲೇ ಆಗಿದೆ. ಅದು ಸತ್ಯವಿಶ್ವಾಸಿಗಳು ಯಾರೆಂದು ತಿಳಿಯುವುದಕ್ಕಾಗಿದೆ.

وَمَآ أَصَٰبَكُمۡ يَوۡمَ ٱلۡتَقَى ٱلۡجَمۡعَانِ فَبِإِذۡنِ ٱللَّهِ وَلِيَعۡلَمَ ٱلۡمُؤۡمِنِينَ ١٦٦

167. ಮತ್ತು ಕಪಟವಿಶ್ವಾಸಿಗಳು ಯಾರೆಂದು ತಿಳಿಯುವುದಕ್ಕಾಗಿ. ಆ ಕಪಟವಿಶ್ವಾಸಿಗಳೊಡನೆ “ಬನ್ನಿ! ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡಿ ಅಥವಾ (ಕನಿಷ್ಠ) ರಕ್ಷಣೆಯನ್ನಾದರೂ ಮಾಡಿ” ಎಂದು ಹೇಳಲಾದಾಗ, ಅವರು ಹೇಳಿದರು: “ಯುದ್ಧ ಸಂಭವಿಸುತ್ತದೆ-ಯೆಂದು ತಿಳಿದಿದ್ದರೆ ನಾವು ನಿಮ್ಮ ಹಿಂದೆ ಬರುತ್ತಿದ್ದೆವು.” ಅಂದು ಅವರು ಸತ್ಯವಿಶ್ವಾಸಕ್ಕಿಂತಲೂ ಸತ್ಯನಿಷೇಧಕ್ಕೆ ಹೆಚ್ಚು ಹತ್ತಿರವಾ-ಗಿದ್ದರು. ಅವರ ಹೃದಯಗಳಲ್ಲಿಲ್ಲದ ವಿಷಯವನ್ನು ಅವರು ಬಾಯಿ ಮೂಲಕ ಹೇಳುತ್ತಾರೆ. ಅವರು ಮುಚ್ಚಿಡುವ ಸಂಗತಿಗಳು ಏನೆಂದು ಅಲ್ಲಾಹನಿಗೆ ಬಹಳ ಚೆನ್ನಾಗಿ ತಿಳಿದಿದೆ.

وَلِيَعۡلَمَ ٱلَّذِينَ نَافَقُواْۚ وَقِيلَ لَهُمۡ تَعَالَوۡاْ قَٰتِلُواْ فِي سَبِيلِ ٱللَّهِ أَوِ ٱدۡفَعُواْۖ قَالُواْ لَوۡ نَعۡلَمُ قِتَالٗا لَّٱتَّبَعۡنَٰكُمۡۗ هُمۡ لِلۡكُفۡرِ يَوۡمَئِذٍ أَقۡرَبُ مِنۡهُمۡ لِلۡإِيمَٰنِۚ يَقُولُونَ بِأَفۡوَٰهِهِم مَّا لَيۡسَ فِي قُلُوبِهِمۡۚ وَٱللَّهُ أَعۡلَمُ بِمَا يَكۡتُمُونَ ١٦٧

168. ಅವರು ಯಾರೆಂದರೆ, (ಯುದ್ಧಕ್ಕೆ ತೆರಳದೆ) ಮನೆಯಲ್ಲೇ ಕುಳಿತು (ಯುದ್ಧಕ್ಕೆ ಹೊರಟ) ತಮ್ಮ ಸಹೋದರರ ಬಗ್ಗೆ, “ಅವರು ನಮ್ಮ ಮಾತನ್ನು ಕೇಳುತ್ತಿದ್ದರೆ ಖಂಡಿತ ಕೊಲೆಯಾಗುತ್ತಿರಲಿಲ್ಲ” ಎಂದು ಹೇಳಿದವರಾಗಿದ್ದಾರೆ. ಹೇಳಿರಿ: “ನೀವು ಸತ್ಯವನ್ನೇ ಹೇಳುತ್ತಿದ್ದರೆ ನಿಮಗೆ ಸಾವು ಬರುವುದನ್ನು ತಡೆಗಟ್ಟಿರಿ.”

ٱلَّذِينَ قَالُواْ لِإِخۡوَٰنِهِمۡ وَقَعَدُواْ لَوۡ أَطَاعُونَا مَا قُتِلُواْۗ قُلۡ فَٱدۡرَءُواْ عَنۡ أَنفُسِكُمُ ٱلۡمَوۡتَ إِن كُنتُمۡ صَٰدِقِينَ ١٦٨

169. ಅಲ್ಲಾಹನ ಮಾರ್ಗದಲ್ಲಿ ಹುತಾತ್ಮರಾದವರನ್ನು ‘ಸತ್ತವರು’ ಎಂದು ಭಾವಿಸಬೇಡಿ. ಅವರು ಜೀವಂತವಾಗಿದ್ದಾರೆ. ಅವರಿಗೆ ಅವರ ಪರಿಪಾಲಕನ (ಅಲ್ಲಾಹನ) ಬಳಿ ಆಹಾರವನ್ನು ನೀಡಲಾಗುತ್ತಿದೆ.

وَلَا تَحۡسَبَنَّ ٱلَّذِينَ قُتِلُواْ فِي سَبِيلِ ٱللَّهِ أَمۡوَٰتَۢاۚ بَلۡ أَحۡيَآءٌ عِندَ رَبِّهِمۡ يُرۡزَقُونَ ١٦٩

170. ಅಲ್ಲಾಹು ಅವನ ಔದಾರ್ಯದಿಂದ ಅವರಿಗೆ ದಯಪಾಲಿಸಿರು-ವುದರಲ್ಲಿ ಅವರು ಸಂತೋಷವಾಗಿದ್ದಾರೆ. ತಮ್ಮೊಂದಿಗೆ ಇನ್ನೂ ಸೇರದ, ತಮ್ಮ ಹಿಂದೆ (ಇಹಲೋಕದಲ್ಲಿ) ಜೀವಿಸುತ್ತಿರುವ ಸತ್ಯ-ವಿಶ್ವಾಸಿಗಳ ಬಗ್ಗೆ, ಅವರಿಗೆ ಯಾವುದೇ ಭಯವಿಲ್ಲ ಮತ್ತು ಅವರು ದುಃಖಿಸುವುದೂ ಇಲ್ಲವೆಂದು ತಿಳಿದು ಅವರು ಸಂತೋಷಪಡುತ್ತಿದ್ದಾರೆ.

فَرِحِينَ بِمَآ ءَاتَىٰهُمُ ٱللَّهُ مِن فَضۡلِهِۦ وَيَسۡتَبۡشِرُونَ بِٱلَّذِينَ لَمۡ يَلۡحَقُواْ بِهِم مِّنۡ خَلۡفِهِمۡ أَلَّا خَوۡفٌ عَلَيۡهِمۡ وَلَا هُمۡ يَحۡزَنُونَ ١٧٠

171. ಅಲ್ಲಾಹನ ಅನುಗ್ರಹ ಮತ್ತು ಔದಾರ್ಯದಿಂದ; ಮತ್ತು ಅಲ್ಲಾಹು ಸತ್ಯವಿಶ್ವಾಸಿಗಳ ಪ್ರತಿಫಲವನ್ನು ವ್ಯರ್ಥಗೊಳಿಸುವುದಿಲ್ಲ ಎಂಬುದರಿಂದ ಅವರು ಸಂತೋಷಪಡುತ್ತಿದ್ದಾರೆ.

۞يَسۡتَبۡشِرُونَ بِنِعۡمَةٖ مِّنَ ٱللَّهِ وَفَضۡلٖ وَأَنَّ ٱللَّهَ لَا يُضِيعُ أَجۡرَ ٱلۡمُؤۡمِنِينَ ١٧١

**172.** ಅವರು ಯಾರೆಂದರೆ ಗಾಯಾಳುಗಳಾದ ಬಳಿಕವೂ ಅಲ್ಲಾಹು ಮತ್ತು ಸಂದೇಶವಾಹಕರ ಕರೆಗೆ ಉತ್ತರಿಸಿದವರು. ಅವರಲ್ಲಿ ಒಳಿತು ಮಾಡಿದವರಿಗೆ ಮತ್ತು ದೇವಭಯವುಳ್ಳವರಿಗೆ ಮಹಾ ಪ್ರತಿಫಲವಿದೆ.

ٱلَّذِينَ ٱسۡتَجَابُواْ لِلَّهِ وَٱلرَّسُولِ مِنۢ بَعۡدِ مَآ
أَصَابَهُمُ ٱلۡقَرۡحُۚ لِلَّذِينَ أَحۡسَنُواْ مِنۡهُمۡ وَٱتَّقَوۡاْ
أَجۡرٌ عَظِيمٌ ١٧٢

**173.** “ನಿಶ್ಚಯವಾಗಿಯೂ ಆ ಜನರು (ಶತ್ರುಗಳು) ನಿಮ್ಮ ವಿರುದ್ಧ ಸೈನ್ಯವನ್ನು ಜಮಾವಣೆಗೊಳಿಸಿದ್ದಾರೆ; ಆದ್ದರಿಂದ ಅವರನ್ನು ಭಯಪಡಿರಿ” ಎಂದು ಜನರು ಅವರೊಡನೆ ಹೇಳಿದಾಗ ಅದು ಅವರ ವಿಶ್ವಾಸವನ್ನು ಹೆಚ್ಚಿಸಿತು. ಅವರು ಹೇಳಿದರು: “ನಮಗೆ ಅಲ್ಲಾಹು ಸಾಕು. ಭರವಸೆಯಿಡಲು ಅವನು ಅತ್ಯುತ್ತಮನಾಗಿದ್ದಾನೆ.”[1]

ٱلَّذِينَ قَالَ لَهُمُ ٱلنَّاسُ إِنَّ ٱلنَّاسَ قَدۡ جَمَعُواْ
لَكُمۡ فَٱخۡشَوۡهُمۡ فَزَادَهُمۡ إِيمَٰنٗا وَقَالُواْ حَسۡبُنَا
ٱللَّهُ وَنِعۡمَ ٱلۡوَكِيلُ ١٧٣

**174.** ಆದ್ದರಿಂದ ಅವರು ಅಲ್ಲಾಹನ ಕಡೆಯ ಅನುಗ್ರಹ ಮತ್ತು ಔದಾರ್ಯದೊಂದಿಗೆ ಮರಳಿದರು. ಅವರಿಗೆ ಯಾವುದೇ ತೊಂದರೆಯಾಗಲಿಲ್ಲ. ಅವರು ಅಲ್ಲಾಹನ ಸಂಪ್ರೀತಿಯನ್ನು ಹಿಂಬಾಲಿಸಿದರು. ಅಲ್ಲಾಹು ಮಹಾ ಔದಾರ್ಯವುಳ್ಳವನಾಗಿದ್ದಾನೆ.

فَٱنقَلَبُواْ بِنِعۡمَةٖ مِّنَ ٱللَّهِ وَفَضۡلٖ لَّمۡ يَمۡسَسۡهُمۡ
سُوٓءٞ وَٱتَّبَعُواْ رِضۡوَٰنَ ٱللَّهِۗ وَٱللَّهُ ذُو فَضۡلٍ
عَظِيمٍ ١٧٤

**175.** ಅದು (ನಿಮ್ಮನ್ನು ಹೆದರಿಸಿದ್ದು) ಶೈತಾನನಾಗಿದ್ದನು. ಅವನು ಅವನ ಮಿತ್ರರ ಬಗ್ಗೆ ಹೆದರಿಸುತ್ತಾನೆ. ಆದ್ದರಿಂದ ನೀವು ಅವರನ್ನು ಭಯಪಡಬೇಡಿ; ನನ್ನನ್ನು ಭಯಪಡಿರಿ. ನೀವು ಸತ್ಯವಿಶ್ವಾಸಿಗಳಾಗಿದ್ದರೆ.

إِنَّمَا ذَٰلِكُمُ ٱلشَّيۡطَٰنُ يُخَوِّفُ أَوۡلِيَآءَهُۥ فَلَا
تَخَافُوهُمۡ وَخَافُونِ إِن كُنتُم مُّؤۡمِنِينَ ١٧٥

**176.** ಸತ್ಯನಿಷೇಧದಲ್ಲಿ ತ್ವರೆ ಮಾಡುತ್ತಾ ಮುನ್ನುಗ್ಗುವವರನ್ನು ಕಂಡು ನೀವು ಬೇಸರಿಸಬೇಡಿ. ನಿಶ್ಚಯವಾಗಿಯೂ ಅವರು ಅಲ್ಲಾಹನಿಗೆ ಯಾವುದೇ ತೊಂದರೆ ಮಾಡುವುದಿಲ್ಲ. ಅಲ್ಲಾಹು ಅವರಿಗೆ ಪರಲೋಕದಲ್ಲಿ ಯಾವುದೇ ಪಾಲು ನೀಡದಿರಲು ಉದ್ದೇಶಿಸಿದ್ದಾನೆ. ಅವರಿಗೆ ಕಠಿಣವಾದ ಶಿಕ್ಷೆಯಿದೆ.

وَلَا يَحۡزُنكَ ٱلَّذِينَ يُسَٰرِعُونَ فِي ٱلۡكُفۡرِۚ إِنَّهُمۡ
لَن يَضُرُّواْ ٱللَّهَ شَيۡـٔٗاۗ يُرِيدُ ٱللَّهُ أَلَّا يَجۡعَلَ لَهُمۡ
حَظّٗا فِي ٱلۡأٓخِرَةِۖ وَلَهُمۡ عَذَابٌ عَظِيمٌ ١٧٦

**177.** ನಿಶ್ಚಯವಾಗಿಯೂ ಸತ್ಯವಿಶ್ವಾಸದ ಬದಲಿಗೆ ಸತ್ಯನಿಷೇಧವನ್ನು ಖರೀದಿಸಿದವರು ಯಾರೋ—ಅವರು ಅಲ್ಲಾಹನಿಗೆ ಯಾವುದೇ ತೊಂದರೆ ಮಾಡುವುದಿಲ್ಲ. ಅವರಿಗೆ ಯಾತನಾಮಯ ಶಿಕ್ಷೆಯಿದೆ.

إِنَّ ٱلَّذِينَ ٱشۡتَرَوُاْ ٱلۡكُفۡرَ بِٱلۡإِيمَٰنِ لَن يَضُرُّواْ
ٱللَّهَ شَيۡـٔٗاۖ وَلَهُمۡ عَذَابٌ أَلِيمٞ ١٧٧

---

[1] ಉಹುದ್ ಯುದ್ಧದಿಂದ ಮರಳಿದ ಸತ್ಯನಿಷೇಧಿಗಳ ಮುಖಂಡ ಅಬೂಸುಫ್ಯಾನ್ ಕೆಲವು ಗೋತ್ರದವರಿಗೆ ಆಮಿಷ ನೀಡಿ ಕುರೈಷರು ದೊಡ್ಡ ಸೇನೆಯನ್ನು ಜಮಾವಣೆಗೊಳಿಸಿ ಮದೀನದ ಮೇಲೆ ದಂಡೆತ್ತಿ ಬರಲು ತಯಾರಿ ನಡೆಸುತ್ತಿದ್ದಾರೆ ಎಂಬ ವದಂತಿಯನ್ನು ಹಬ್ಬಿಸಿದರು. ಉಹುದ್ ಯುದ್ಧದ ಆಘಾತದಿಂದ ಹೊರಬರದ ಮುಸಲ್ಮಾನರು ಈ ಸುದ್ದಿಯನ್ನು ಕೇಳಿ ಎದೆಗುಂದುತ್ತಾರೆಂದು ಅವರು ಭಾವಿಸಿದ್ದರು. ಹಮ್ರಾವುಲ್ ಅಸದ್ ಎಂಬ ಸ್ಥಳದಲ್ಲಿದ್ದ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮತ್ತು ಮುಸಲ್ಮಾನರು ಈ ಸುದ್ದಿಯನ್ನು ಕೇಳಿದಾಗ ಅವರ ವಿಶ್ವಾಸವು ಇಮ್ಮಡಿಯಾಯಿತೇ ವಿನಾ ಅವರು ಎದೆಗುಂದಲಿಲ್ಲ.

178. ಸತ್ಯನಿಷೇಧಿಗಳಿಗೆ ನಾವು ಕಾಲಾವಕಾಶ ನೀಡುವುದು ಅವರ ಪಾಲಿಗೆ ಒಳಿತೆಂದು ಅವರೆಂದೂ ಭಾವಿಸದಿರಲಿ. ನಾವು ಅವರಿಗೆ ಕಾಲಾವಕಾಶ ನೀಡುವುದು ಅವರು ಪಾಪಗಳನ್ನು ಹೆಚ್ಚಿಸಲಿ-ಕ್ಕಾಗಿದೆ. ಅವರಿಗೆ ಅವಮಾನಕರ ಶಿಕ್ಷೆಯಿದೆ.

وَلَا يَحۡسَبَنَّ ٱلَّذِينَ كَفَرُوٓاْ أَنَّمَا نُمۡلِي لَهُمۡ
خَيۡرٞ لِّأَنفُسِهِمۡۚ إِنَّمَا نُمۡلِي لَهُمۡ لِيَزۡدَادُوٓاْ إِثۡمٗاۖ
وَلَهُمۡ عَذَابٞ مُّهِينٞ ١٧٨

179. ಶುದ್ಧ ಮತ್ತು ಅಶುದ್ಧವನ್ನು ಬೇರ್ಪಡಿಸಿ ತೋರಿಸುವ ತನಕ ನೀವು ಯಾವ ಸ್ಥಿತಿಯಲ್ಲಿದ್ದೀರೋ ಅದೇ ಸ್ಥಿತಿಯಲ್ಲಿ ಅಲ್ಲಾಹು ಸತ್ಯವಿಶ್ವಾಸಿಗಳನ್ನು ಬಿಟ್ಟುಬಿಡುವುದಿಲ್ಲ. ಅಲ್ಲಾಹು ನಿಮಗೆ ಅದೃಶ್ಯ ಜ್ಞಾನವನ್ನು ತಿಳಿಸಿಕೊಡುವುದೂ ಇಲ್ಲ. ಆದರೆ ಅಲ್ಲಾಹು ಅವನ ಸಂದೇಶವಾಹಕರುಗಳಲ್ಲಿ ಅವನು ಇಚ್ಛಿಸುವವರನ್ನು ಆರಿಸುತ್ತಾನೆ. ಆದ್ದರಿಂದ ನೀವು ಅಲ್ಲಾಹನಲ್ಲಿ ಮತ್ತು ಅವನ ಸಂದೇಶವಾಹಕರಲ್ಲಿ ವಿಶ್ವಾಸವಿಡಿರಿ. ನೀವು ವಿಶ್ವಾಸವಿಟ್ಟರೆ ಮತ್ತು ದೇವಭಯದಿಂದ ಜೀವಿಸಿದರೆ ನಿಮಗೆ ಮಹಾ ಪ್ರತಿಫಲವಿದೆ.

مَّا كَانَ ٱللَّهُ لِيَذَرَ ٱلۡمُؤۡمِنِينَ عَلَىٰ مَآ أَنتُمۡ عَلَيۡهِ
حَتَّىٰ يَمِيزَ ٱلۡخَبِيثَ مِنَ ٱلطَّيِّبِۗ وَمَا كَانَ ٱللَّهُ
لِيُطۡلِعَكُمۡ عَلَى ٱلۡغَيۡبِ وَلَٰكِنَّ ٱللَّهَ يَجۡتَبِي
مِن رُّسُلِهِۦ مَن يَشَآءُۖ فَـَٔامِنُواْ بِٱللَّهِ وَرُسُلِهِۦۚ
وَإِن تُؤۡمِنُواْ وَتَتَّقُواْ فَلَكُمۡ أَجۡرٌ عَظِيمٞ ١٧٩

180. ಅಲ್ಲಾಹು ತನ್ನ ಔದಾರ್ಯದಿಂದ ದಯಪಾಲಿಸಿದ ಧನದಲ್ಲಿ ಜಿಪುಣತೆ ತೋರುವವರು ಯಾರೋ—ಅದು ಅವರಿಗೆ ಒಳಿತೆಂದು ಅವರು ಭಾವಿಸದಿರಲಿ. ಅಲ್ಲ, ವಾಸ್ತವವಾಗಿ ಅದು ಅವರಿಗೆ ಕೆಡುಕಾಗಿದೆ. ಪುನರುತ್ಥಾನ ದಿನದಂದು ಅವರು ಜಿಪುಣತೆ ತೋರಿದ ವಸ್ತುವನ್ನು ಅವರ ಕೊರಳಿಗೆ ಹಾರವಾಗಿ ತೊಡಿಸಲಾಗುವುದು. ಭೂಮ್ಯಾಕಾಶಗಳ ವಾರಸುಹಕ್ಕು ಅಲ್ಲಾಹನಿಗೆ ಸೇರಿದ್ದು. ನೀವು ಮಾಡುವ ಕರ್ಮಗಳ ಬಗ್ಗೆ ಅಲ್ಲಾಹು ಸೂಕ್ಷ್ಮವಾಗಿ ತಿಳಿಯುವವನಾಗಿದ್ದಾನೆ.

وَلَا يَحۡسَبَنَّ ٱلَّذِينَ يَبۡخَلُونَ بِمَآ ءَاتَىٰهُمُ ٱللَّهُ
مِن فَضۡلِهِۦ هُوَ خَيۡرٗا لَّهُمۖ بَلۡ هُوَ شَرّٞ لَّهُمۡۖ
سَيُطَوَّقُونَ مَا بَخِلُواْ بِهِۦ يَوۡمَ ٱلۡقِيَٰمَةِۗ وَلِلَّهِ
مِيرَٰثُ ٱلسَّمَٰوَٰتِ وَٱلۡأَرۡضِۗ وَٱللَّهُ بِمَا تَعۡمَلُونَ
خَبِيرٞ ١٨٠

181. ಅಲ್ಲಾಹು ಬಡವನು ಮತ್ತು ನಾವು ಶ್ರೀಮಂತರು ಎಂದು ಹೇಳಿದವರ (ಯಹೂದಿಗಳ) ಮಾತನ್ನು ಅಲ್ಲಾಹು ಖಂಡಿತ ಕೇಳಿದ್ದಾನೆ.[1] ಅವರು ಹೇಳಿದ ಮಾತನ್ನು ಮತ್ತು ಅವರು ಪ್ರವಾದಿಗಳನ್ನು ಅನ್ಯಾಯವಾಗಿ ಕೊಲೆ ಮಾಡಿದ್ದನ್ನು ನಾವು ದಾಖಲಿಸಿಡುತ್ತೇವೆ. ಉರಿಯುವ ನರಕ ಶಿಕ್ಷೆಯ ರುಚಿಯನ್ನು ನೋಡಿರಿ ಎಂದು ನಾವು ಅವರೊಡನೆ ಹೇಳುವೆವು.

لَّقَدۡ سَمِعَ ٱللَّهُ قَوۡلَ ٱلَّذِينَ قَالُوٓاْ إِنَّ ٱللَّهَ فَقِيرٞ
وَنَحۡنُ أَغۡنِيَآءُۘ سَنَكۡتُبُ مَا قَالُواْ وَقَتۡلَهُمُ
ٱلۡأَنۢبِيَآءَ بِغَيۡرِ حَقّٖ وَنَقُولُ ذُوقُواْ عَذَابَ
ٱلۡحَرِيقِ ١٨١

182. ಅದು ನಿಮ್ಮ ಕೈಗಳು ಮಾಡಿದ ದುಷ್ಕರ್ಮಗಳ ಫಲವಾಗಿದೆ. ಅಲ್ಲಾಹು ತನ್ನ ದಾಸರಿಗೆ ಅನ್ಯಾಯ ಮಾಡುವವನಲ್ಲ.

ذَٰلِكَ بِمَا قَدَّمَتۡ أَيۡدِيكُمۡ وَأَنَّ ٱللَّهَ لَيۡسَ
بِظَلَّامٖ لِّلۡعَبِيدِ ١٨٢

183. ಅವರು ಯಾರೆಂದರೆ, "ನಮ್ಮ ಮುಂದೆ ಒಂದು ಬಲಿ ನೀಡಿ

ٱلَّذِينَ قَالُوٓاْ إِنَّ ٱللَّهَ عَهِدَ إِلَيۡنَآ أَلَّا نُؤۡمِنَ

[1] ಅಲ್ಲಾಹನ ಮಾರ್ಗದಲ್ಲಿ ಖರ್ಚು ಮಾಡುವುದನ್ನು ಪ್ರೋತ್ಸಾಹಿಸುತ್ತಾ, "ಅಲ್ಲಾಹನಿಗೆ ಉತ್ತಮ ಸಾಲವನ್ನು ನೀಡುವವರು ಯಾರು?" ಎಂಬ ವಚನವು ಅವತೀರ್ಣವಾದಾಗ ಯಹೂದಿಗಳು "ಓ ಮುಹಮ್ಮದ್! ನಿಮ್ಮ ದೇವರು ಬಡವನಾಗಿ ಬಿಟ್ಟಿದ್ದಾನೆ. ಅವನು ಅವನ ಸೃಷ್ಟಿಗಳಿಂದ ಹಣ ಕೇಳುತ್ತಿದ್ದಾನೆ." ಎಂದು ತಮಾಷೆ ಮಾಡತೊಡಗಿದರು. ಆಗ ಈ ವಚನವು ಅವತೀರ್ಣವಾಯಿತು.

ಅದನ್ನು ಅಗ್ನಿಯು ಭಕ್ಷಿಸುವುದನ್ನು (ಕಣ್ಣಾರೆ ನೋಡುವ) ತನಕ ನಾವು ಯಾವುದೇ ಸಂದೇಶವಾಹಕನಲ್ಲಿ ವಿಶ್ವಾಸವಿಡಬಾರದು ಎಂದು ಅಲ್ಲಾಹು ನಮ್ಮಿಂದ ಕರಾರು ಪಡೆದಿದ್ದಾನೆ" ಎಂದು ಹೇಳಿದವರು.[1] ಹೇಳಿರಿ: "ನನಗಿಂತ ಮೊದಲು ಹಲವಾರು ಸಂದೇಶವಾಹಕರುಗಳು ಸ್ಪಷ್ಟ ಪುರಾವೆಗಳೊಂದಿಗೆ ಮತ್ತು ನೀವು ಹೇಳುತ್ತಿರುವ ಪವಾಡಗಳೊಂದಿಗೆ ನಿಮ್ಮ ಬಳಿಗೆ ಬಂದಿದ್ದರು. ಹಾಗಿದ್ದೂ ನೀವು ಸತ್ಯವಂತರಾಗಿದ್ದರೆ ನೀವೇಕೆ ಅವರನ್ನು ಕೊಲೆ ಮಾಡಿದಿರಿ?"

لِرَسُولٍ حَتَّىٰ يَأۡتِيَنَا بِقُرۡبَانٖ تَأۡكُلُهُ ٱلنَّارُۗ قُلۡ
قَدۡ جَآءَكُمۡ رُسُلٞ مِّن قَبۡلِي بِٱلۡبَيِّنَٰتِ وَبِٱلَّذِي
قُلۡتُمۡ فَلِمَ قَتَلۡتُمُوهُمۡ إِن كُنتُمۡ صَٰدِقِينَ ١٨٣

---

184. ಅವರು ನಿಮ್ಮನ್ನು ನಿಷೇಧಿಸುವುದಾದರೆ ನಿಮಗಿಂತ ಮೊದಲು ಸ್ಪಷ್ಟ ಪುರಾವೆಗಳೊಂದಿಗೆ, ಹೊತ್ತಗೆಗಳೊಂದಿಗೆ ಮತ್ತು ಪ್ರಕಾಶ ಬೀರುವ ಗ್ರಂಥದೊಂದಿಗೆ ಬಂದ ಸಂದೇಶವಾಹಕರು ಕೂಡ ನಿಷೇಧಿಸಲ್ಪಟ್ಟಿದ್ದರು.

فَإِن كَذَّبُوكَ فَقَدۡ كُذِّبَ رُسُلٞ مِّن قَبۡلِكَ
جَآءُو بِٱلۡبَيِّنَٰتِ وَٱلزُّبُرِ وَٱلۡكِتَٰبِ ٱلۡمُنِيرِ ١٨٤

---

185. ಎಲ್ಲಾ ಆತ್ಮಗಳೂ ಸಾವಿನ ರುಚಿಯನ್ನು ನೋಡಲಿವೆ. ನಿಮ್ಮ ಪ್ರತಿಫಲಗಳನ್ನು ಪುನರುತ್ಥಾನ ದಿನದಂದು ನಿಮಗೆ ಪೂರ್ಣವಾಗಿ ನೀಡಲಾಗುವುದು. ಆಗ ಯಾರು ನರಕದಿಂದ ದೂರವಾಗಿ, ಸ್ವರ್ಗಕ್ಕೆ ಪ್ರವೇಶ ಪಡೆಯುತ್ತಾನೋ ಅವನು ಜಯಶಾಲಿಯಾದನು. ಇಹಲೋಕ ಜೀವನವು ಮರುಳುಗೊಳಿಸುವ ಆನಂದ ಮಾತ್ರವಾಗಿದೆ.

كُلُّ نَفۡسٖ ذَآئِقَةُ ٱلۡمَوۡتِۗ وَإِنَّمَا تُوَفَّوۡنَ أُجُورَكُمۡ
يَوۡمَ ٱلۡقِيَٰمَةِۖ فَمَن زُحۡزِحَ عَنِ ٱلنَّارِ وَأُدۡخِلَ
ٱلۡجَنَّةَ فَقَدۡ فَازَۗ وَمَا ٱلۡحَيَوٰةُ ٱلدُّنۡيَآ إِلَّا مَتَٰعُ
ٱلۡغُرُورِ ١٨٥

---

186. ನಿಶ್ಚಯವಾಗಿಯೂ ನಿಮ್ಮ ತನು-ಧನಗಳಲ್ಲಿ ನಿಮ್ಮನ್ನು ಪರೀಕ್ಷಿಸಲಾಗುವುದು. ನಿಮಗಿಂತ ಮೊದಲು ಗ್ರಂಥ ನೀಡಲಾದವರಿಂದ ಮತ್ತು ಬಹುದೇವಾರಾಧಕರಿಂದ ನೀವು ಅನೇಕ ಚುಚ್ಚು ಮಾತುಗಳನ್ನು ಕೇಳುವಿರಿ. ನೀವು ತಾಳ್ಮೆ ವಹಿಸಿದರೆ ಮತ್ತು ಅಲ್ಲಾಹನನ್ನು ಭಯಪಟ್ಟು ಜೀವಿಸಿದರೆ ನಿಶ್ಚಯವಾಗಿಯೂ ಅದು ದೃಢಸಂಕಲ್ಪದಲ್ಲಿ ಸೇರಿದ ವಿಷಯವಾಗಿದೆ.

لَتُبۡلَوُنَّ فِيٓ أَمۡوَٰلِكُمۡ وَأَنفُسِكُمۡ وَلَتَسۡمَعُنَّ
مِنَ ٱلَّذِينَ أُوتُواْ ٱلۡكِتَٰبَ مِن قَبۡلِكُمۡ وَمِنَ
ٱلَّذِينَ أَشۡرَكُوٓاْ أَذٗى كَثِيرٗاۚ وَإِن تَصۡبِرُواْ وَتَتَّقُواْ
فَإِنَّ ذَٰلِكَ مِنۡ عَزۡمِ ٱلۡأُمُورِ ١٨٦

---

187. "ನಿಶ್ಚಯವಾಗಿಯೂ ನೀವು ಅದನ್ನು (ಗ್ರಂಥವನ್ನು) ಜನರಿಗೆ ವಿವರಿಸಿಕೊಡಬೇಕು ಮತ್ತು ಅದನ್ನು ಬಚ್ಚಿಡಬಾರದು" ಎಂದು ಅಲ್ಲಾಹು ಗ್ರಂಥ ನೀಡಲಾದವರಿಂದ ಕರಾರು ಪಡೆದ ಸಂದರ್ಭ.

وَإِذۡ أَخَذَ ٱللَّهُ مِيثَٰقَ ٱلَّذِينَ أُوتُواْ ٱلۡكِتَٰبَ
لَتُبَيِّنُنَّهُۥ لِلنَّاسِ وَلَا تَكۡتُمُونَهُۥ فَنَبَذُوهُ

---

[1] ಇಲ್ಲಿ ಯಹೂದಿಗಳು ಹೇಳಿದ ಇನ್ನೊಂದು ಸುಳ್ಳನ್ನು ಕೂಡ ಅನಾವರಣಗೊಳಿಸಲಾಗಿದೆ. ಅದೇನೆಂದರೆ ಅವರು ಹೇಳುತ್ತಿದ್ದರು: "ಒಬ್ಬ ವ್ಯಕ್ತಿ ನಿಮ್ಮ ಬಳಿಗೆ ಬಂದು ಅಲ್ಲಾಹನಲ್ಲಿ ಪ್ರಾರ್ಥಿಸಿದಾಗ ಆಕಾಶದಿಂದ ಬೆಂಕಿ ಸುರಿದು ನೀವು ಅಲ್ಲಾಹನಿಗೆ ಕುರ್ಬಾನಿ ಮಾಡಿದ ಪ್ರಾಣಿಯನ್ನು ಅದು ಭಕ್ಷಿಸಿದರೆ ಮಾತ್ರ ಆ ವ್ಯಕ್ತಿಯನ್ನು ಪ್ರವಾದಿಯೆಂದು ನಂಬಿರಿ. ಇಲ್ಲದಿದ್ದರೆ ನಂಬಬೇಡಿ ಎಂದು ಅಲ್ಲಾಹು ನಮ್ಮೊಡನೆ ಕರಾರು ಪಡೆದಿದ್ದಾನೆ. ನೀವು ಆ ಪವಾಡವನ್ನು ತೋರಿಸಿಲ್ಲ. ಆದ್ದರಿಂದ ನಾವು ನಿಮ್ಮಲ್ಲಿ ವಿಶ್ವಾಸವಿಡುವುದಿಲ್ಲ." ಆದರೆ ಇದು ಅವರು ಹೇಳುವ ಒಂದು ನೆಪ ಮಾತ್ರ. ಏಕೆಂದರೆ ಇದಕ್ಕಿಂತ ಮೊದಲು ಇಂತಹ ಅನೇಕ ಪವಾಡಗಳನ್ನು ತೋರಿಸಿದ ಪ್ರವಾದಿಗಳನ್ನು ಇವರ ಪೂರ್ವಜರು ತಿರಸ್ಕರಿಸಿದ್ದರು ಮತ್ತು ನಿರ್ದಯವಾಗಿ ಕೊಂದು ಹಾಕಿದ್ದರು.

ಆದರೆ ಅವರು ಅದನ್ನು (ಗ್ರಂಥವನ್ನು) ತಮ್ಮ ಬೆನ್ನ ಹಿಂದಕ್ಕೆ ಎಸೆದರು ಮತ್ತು ಅದನ್ನು ಅಲ್ಪ ಬೆಲೆಗೆ ಮಾರಾಟ ಮಾಡಿದರು. ಅವರು ಮಾಡಿದ ಮಾರಾಟವು ಬಹಳ ನಿಕೃಷ್ಟವಾಗಿದೆ!

وَرَآءَ ظُهُورِهِمۡ وَٱشۡتَرَوۡاْ بِهِۦ ثَمَنٗا قَلِيلٗاۖ فَبِئۡسَ مَا يَشۡتَرُونَ ١٨٧

---

188. ತಾವು ಮಾಡಿದ ಕರ್ಮಗಳ ಬಗ್ಗೆ ಸಂತೋಷಪಡುವವರು ಮತ್ತು ತಾವು ಮಾಡದ ಕರ್ಮಗಳ ಹೆಸರಿನಲ್ಲಿ ಪ್ರಶಂಸೆ ಪಡೆಯಲು ಇಷ್ಟಪಡುವವರು ಯಾರೋ—ಅವರು ಶಿಕ್ಷೆಯಿಂದ ಮುಕ್ತರೆಂದು ನೀವೆಂದೂ ಭಾವಿಸಬೇಡಿ. ಅವರಿಗೆ ಯಾತನಾಮಯ ಶಿಕ್ಷೆಯಿದೆ.

لَا تَحۡسَبَنَّ ٱلَّذِينَ يَفۡرَحُونَ بِمَآ أَتَواْ وَّيُحِبُّونَ أَن يُحۡمَدُواْ بِمَا لَمۡ يَفۡعَلُواْ فَلَا تَحۡسَبَنَّهُم بِمَفَازَةٖ مِّنَ ٱلۡعَذَابِۖ وَلَهُمۡ عَذَابٌ أَلِيمٞ ١٨٨

---

189. ಭೂಮ್ಯಾಕಾಶಗಳ ಸಾರ್ವಭೌಮತ್ವವು ಅಲ್ಲಾಹನಿಗೆ ಸೇರಿದ್ದು. ಅಲ್ಲಾಹು ಎಲ್ಲ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

وَلِلَّهِ مُلۡكُ ٱلسَّمَٰوَٰتِ وَٱلۡأَرۡضِۗ وَٱللَّهُ عَلَىٰ كُلِّ شَيۡءٖ قَدِيرٌ ١٨٩

---

190. ನಿಶ್ಚಯವಾಗಿಯೂ ಭೂಮ್ಯಾಕಾಶಗಳ ಸೃಷ್ಟಿಯಲ್ಲಿ ಮತ್ತು ರಾತ್ರಿ ಹಗಲುಗಳ ಬದಲಾವಣೆಯಲ್ಲಿ ಬುದ್ಧಿವಂತರಿಗೆ ಅನೇಕ ದೃಷ್ಟಾಂತಗಳಿವೆ.

إِنَّ فِي خَلۡقِ ٱلسَّمَٰوَٰتِ وَٱلۡأَرۡضِ وَٱخۡتِلَٰفِ ٱلَّيۡلِ وَٱلنَّهَارِ لَأٓيَٰتٖ لِّأُوْلِي ٱلۡأَلۡبَٰبِ ١٩٠

---

191. ಅವರು ಯಾರೆಂದರೆ, ನಿಂತುಕೊಂಡು, ಕುಳಿತುಕೊಂಡು ಮತ್ತು ಪಾರ್ಶ್ವಕ್ಕೆ ಸರಿದು (ಮಲಗಿಕೊಂಡು) ಅಲ್ಲಾಹನನ್ನು ಸ್ಮರಿಸುವವರು ಮತ್ತು ಭೂಮ್ಯಾಕಾಶಗಳ ಸೃಷ್ಟಿಯ ಬಗ್ಗೆ ಆಲೋಚಿಸುವವರು. (ಅವರು ಹೇಳುತ್ತಾರೆ): “ಓ ನಮ್ಮ ಪರಿಪಾಲಕನೇ! ನೀನು ಇದನ್ನು ವ್ಯರ್ಥವಾಗಿ ಸೃಷ್ಟಿಸಿಲ್ಲ. ನೀನು ಪರಿಶುದ್ಧನು. ಆದ್ದರಿಂದ ನಮ್ಮನ್ನು ನರಕ ಶಿಕ್ಷೆಯಿಂದ ರಕ್ಷಿಸು.

ٱلَّذِينَ يَذۡكُرُونَ ٱللَّهَ قِيَٰمٗا وَقُعُودٗا وَعَلَىٰ جُنُوبِهِمۡ وَيَتَفَكَّرُونَ فِي خَلۡقِ ٱلسَّمَٰوَٰتِ وَٱلۡأَرۡضِ رَبَّنَا مَا خَلَقۡتَ هَٰذَا بَٰطِلٗا سُبۡحَٰنَكَ فَقِنَا عَذَابَ ٱلنَّارِ ١٩١

---

192. ಓ ನಮ್ಮ ಪರಿಪಾಲಕನೇ! ನೀನು ಯಾರನ್ನು ನರಕಕ್ಕೆ ತಳ್ಳುತ್ತೀಯೋ ಅವನನ್ನು ನೀನು ಅವಮಾನಿಸಿರುವೆ. ಅಕ್ರಮಿಗಳಿಗೆ ಯಾವುದೇ ಸಹಾಯಕರಿಲ್ಲ.

رَبَّنَآ إِنَّكَ مَن تُدۡخِلِ ٱلنَّارَ فَقَدۡ أَخۡزَيۡتَهُۥۖ وَمَا لِلظَّٰلِمِينَ مِنۡ أَنصَارٖ ١٩٢

---

193. ಓ ನಮ್ಮ ಪರಿಪಾಲಕನೇ! ನಿಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ವಿಶ್ವಾಸವಿಡಿ ಎಂದು ಹೇಳುತ್ತಾ ಸತ್ಯವಿಶ್ವಾಸಕ್ಕೆ ಕರೆ ನೀಡುವವನ ಕರೆಯನ್ನು ಕೇಳಿ ನಾವು ವಿಶ್ವಾಸವಿಟ್ಟಿದ್ದೇವೆ. ಆದ್ದರಿಂದ ಓ ನಮ್ಮ ಪರಿಪಾಲಕನೇ! ನಮ್ಮ ಪಾಪಗಳನ್ನು ಕ್ಷಮಿಸು ಮತ್ತು ನಮ್ಮ ದೋಷಗಳನ್ನು ನಮ್ಮಿಂದ ಅಳಿಸು; ನಮ್ಮನ್ನು ನೀತಿವಂತರೊಂದಿಗೆ ಮರಣಹೊಂದುವಂತೆ ಮಾಡು.

رَّبَّنَآ إِنَّنَا سَمِعۡنَا مُنَادِيٗا يُنَادِي لِلۡإِيمَٰنِ أَنۡ ءَامِنُواْ بِرَبِّكُمۡ فَـَٔامَنَّاۚ رَبَّنَا فَٱغۡفِرۡ لَنَا ذُنُوبَنَا وَكَفِّرۡ عَنَّا سَيِّـَٔاتِنَا وَتَوَفَّنَا مَعَ ٱلۡأَبۡرَارِ ١٩٣

---

194. ಓ ನಮ್ಮ ಪರಿಪಾಲಕನೇ! ನಿನ್ನ ಸಂದೇಶವಾಹಕರ ಮೂಲಕ ನೀನು ವಾಗ್ದಾನ ಮಾಡಿದ್ದನ್ನು ನಮಗೆ ದಯಪಾಲಿಸು ಮತ್ತು ಪುನರುತ್ಥಾನ ದಿನದಂದು ನಮ್ಮನ್ನು ಅವಮಾನಿಸದಿರು. ನಿಶ್ಚಯವಾಗಿಯೂ ನೀನು ವಾಗ್ದಾನವನ್ನು ಉಲ್ಲಂಘಿಸುವುದಿಲ್ಲ.”

رَبَّنَا وَءَاتِنَا مَا وَعَدتَّنَا عَلَىٰ رُسُلِكَ وَلَا تُخۡزِنَا يَوۡمَ ٱلۡقِيَٰمَةِۖ إِنَّكَ لَا تُخۡلِفُ ٱلۡمِيعَادَ ١٩٤

195. ಆಗ ಅವರ ಪರಿಪಾಲಕನು (ಅಲ್ಲಾಹು) ಅವರಿಗೆ ಉತ್ತರಿಸಿದನು: “ಪುರುಷನಾಗಲಿ ಸ್ತ್ರೀಯಾಗಲಿ ನಿಮ್ಮಲ್ಲಿ ಕರ್ಮವೆಸಗಿದ ಯಾರ ಕರ್ಮವನ್ನೂ ನಾನು ನಿಷ್ಫಲಗೊಳಿಸುವುದಿಲ್ಲ. ನೀವು ಒಬ್ಬರು ಇನ್ನೊಬ್ಬರಿಂದ ಉಂಟಾದವರು. ಆದ್ದರಿಂದ ವಲಸೆ (ಹಿಜ್ರ) ಮಾಡಿದವರು, ತಮ್ಮ ಮನೆಗಳಿಂದ ಹೊರಹಾಕಲಾದವರು, ನನ್ನ ಮಾರ್ಗದಲ್ಲಿ ತೊಂದರೆಯನ್ನು ಅನುಭವಿಸಿದವರು, (ನನ್ನ ಮಾರ್ಗದಲ್ಲಿ) ಯುದ್ಧ ಮಾಡಿದವರು ಮತ್ತು ಕೊಲೆಯಾದವರು (ಹುತಾತ್ಮರು) ಯಾರೋ—ಅವರ ಪಾಪಗಳನ್ನು ನಾನು ಅಳಿಸುವೆನು ಮತ್ತು ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳಿಗೆ ಅವರನ್ನು ಪ್ರವೇಶ ಮಾಡಿಸುವೆನು. ಇದು ಅಲ್ಲಾಹನ ಕಡೆಯ ಪ್ರತಿಫಲವಾಗಿದೆ. ಅಲ್ಲಾಹನ ಬಳಿ ಅತ್ಯುತ್ತಮವಾದ ಪ್ರತಿಫಲವಿದೆ.

فَٱسۡتَجَابَ لَهُمۡ رَبُّهُمۡ أَنِّي لَآ أُضِيعُ عَمَلَ عَٰمِلٖ مِّنكُم مِّن ذَكَرٍ أَوۡ أُنثَىٰۖ بَعۡضُكُم مِّنۢ بَعۡضٖۖ فَٱلَّذِينَ هَاجَرُواْ وَأُخۡرِجُواْ مِن دِيَٰرِهِمۡ وَأُوذُواْ فِي سَبِيلِي وَقَٰتَلُواْ وَقُتِلُواْ لَأُكَفِّرَنَّ عَنۡهُمۡ سَيِّـَٔاتِهِمۡ وَلَأُدۡخِلَنَّهُمۡ جَنَّٰتٖ تَجۡرِي مِن تَحۡتِهَا ٱلۡأَنۡهَٰرُ ثَوَابٗا مِّنۡ عِندِ ٱللَّهِۚ وَٱللَّهُ عِندَهُۥ حُسۡنُ ٱلثَّوَابِ ١٩٥

196. ಊರುಗಳಲ್ಲಿ ಸತ್ಯನಿಷೇಧಿಗಳ ಮೆರೆದಾಟವು ನಿಮ್ಮನ್ನು ಮರುಳುಗೊಳಿಸದಿರಲಿ.

لَا يَغُرَّنَّكَ تَقَلُّبُ ٱلَّذِينَ كَفَرُواْ فِي ٱلۡبِلَٰدِ ١٩٦

197. ಅದು ತಾತ್ಕಾಲಿಕ ಆನಂದವಾಗಿದೆ. ನಂತರ ಅವರ ವಾಸಸ್ಥಳವು ನರಕಾಗ್ನಿಯಾಗಿದೆ. ಆ ವಾಸಸ್ಥಳ ಬಹಳ ನಿಕೃಷ್ಟವಾಗಿದೆ!

مَتَٰعٞ قَلِيلٞ ثُمَّ مَأۡوَىٰهُمۡ جَهَنَّمُۖ وَبِئۡسَ ٱلۡمِهَادُ ١٩٧

198. ಆದರೆ ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಭಯಪಡುವವರು ಯಾರೋ—ಅವರಿಗೆ ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳಿವೆ. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅದು ಅಲ್ಲಾಹನ ಕಡೆಯ ಔತಣವಾಗಿದೆ. ನೀತಿವಂತರಿಗೆ ಅಲ್ಲಾಹನ ಬಳಿಯಿರುವುದೇ ಅತ್ಯುತ್ತಮವಾಗಿದೆ.

لَٰكِنِ ٱلَّذِينَ ٱتَّقَوۡاْ رَبَّهُمۡ لَهُمۡ جَنَّٰتٞ تَجۡرِي مِن تَحۡتِهَا ٱلۡأَنۡهَٰرُ خَٰلِدِينَ فِيهَا نُزُلٗا مِّنۡ عِندِ ٱللَّهِۗ وَمَا عِندَ ٱللَّهِ خَيۡرٞ لِّلۡأَبۡرَارِ ١٩٨

199. ನಿಶ್ಚಯವಾಗಿಯೂ ಗ್ರಂಥದವರಲ್ಲಿ ಕೆಲವರಿದ್ದಾರೆ. ಅವರು ಅಲ್ಲಾಹನಲ್ಲಿ, ನಿಮಗೆ ಅವತೀರ್ಣವಾಗಿರುವುದರಲ್ಲಿ ಮತ್ತು ಅವರಿಗೆ ಅವತೀರ್ಣವಾಗಿರುವುದರಲ್ಲಿ ವಿಶ್ವಾಸವಿಡುತ್ತಾರೆ. ಅವರು ಅಲ್ಲಾಹನಿಗೆ ವಿಧೇಯತೆಯಿಂದ ಶರಣಾಗಿದ್ದಾರೆ. ಅವರು ಅಲ್ಲಾಹನ ವಚನಗಳನ್ನು ಅಲ್ಪ ಬೆಲೆಗೆ ಮಾರುವುದಿಲ್ಲ. ಅವರಿಗೆ ಅವರ ಪರಿಪಾಲಕನ (ಅಲ್ಲಾಹನ) ಬಳಿ ಅವರ ಪ್ರತಿಫಲವಿದೆ. ನಿಶ್ಚಯ ವಾಗಿಯೂ ಅಲ್ಲಾಹು ಅತಿವೇಗವಾಗಿ ವಿಚಾರಣೆ ಮಾಡುತ್ತಾನೆ.

وَإِنَّ مِنۡ أَهۡلِ ٱلۡكِتَٰبِ لَمَن يُؤۡمِنُ بِٱللَّهِ وَمَآ أُنزِلَ إِلَيۡكُمۡ وَمَآ أُنزِلَ إِلَيۡهِمۡ خَٰشِعِينَ لِلَّهِ لَا يَشۡتَرُونَ بِـَٔايَٰتِ ٱللَّهِ ثَمَنٗا قَلِيلًاۚ أُوْلَٰٓئِكَ لَهُمۡ أَجۡرُهُمۡ عِندَ رَبِّهِمۡۗ إِنَّ ٱللَّهَ سَرِيعُ ٱلۡحِسَابِ ١٩٩

200. ಓ ಸತ್ಯವಿಶ್ವಾಸಿಗಳೇ! ತಾಳ್ಮೆಯಿಂದಿರಿ, ಪರಸ್ಪರ ಸ್ಥೈರ್ಯವನ್ನು ತೋರಿರಿ ಮತ್ತು ಪ್ರತಿರೋಧ ಸನ್ನದ್ಧರಾಗಿರಿ. ಅಲ್ಲಾಹನನ್ನು ಭಯಪಡಿರಿ. ನೀವು ಯಶಸ್ವಿಯಾಗುವುದಕ್ಕಾಗಿ.

يَٰٓأَيُّهَا ٱلَّذِينَ ءَامَنُواْ ٱصۡبِرُواْ وَصَابِرُواْ وَرَابِطُواْ وَٱتَّقُواْ ٱللَّهَ لَعَلَّكُمۡ تُفۡلِحُونَ ٢٠٠

# 4. ಅನ್ನಿಸಾಅ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಓ ಜನರೇ! ನಿಮ್ಮನ್ನು ಒಂದೇ ದೇಹದಿಂದ ಸೃಷ್ಟಿಸಿದ ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಭಯಪಡಿರಿ. ಅವನು ಅದರಿಂದಲೇ ಅದರ ಸಂಗಾತಿಯನ್ನು ಸೃಷ್ಟಿಸಿದನು ಮತ್ತು ಅವರಿಬ್ಬರಿಂದ ಅಸಂಖ್ಯ ಪುರುಷರನ್ನು ಮತ್ತು ಸ್ತ್ರೀಯರನ್ನು ಹಬ್ಬಿಸಿದನು. ಯಾರ ಹೆಸರಿನಿಂದ ನೀವು ಪರಸ್ಪರ ಕೇಳುತ್ತೀರೋ ಆ ಅಲ್ಲಾಹನನ್ನು ಮತ್ತು ಕುಟುಂಬ ಸಂಬಂಧ ಕಡಿಯುವುದನ್ನು ಭಯಪಡಿರಿ. ಅಲ್ಲಾಹು ನಿಮ್ಮನ್ನು ಸದಾ ಗಮನಿಸುತ್ತಿದ್ದಾನೆ.

يَـٰٓأَيُّهَا ٱلنَّاسُ ٱتَّقُواْ رَبَّكُمُ ٱلَّذِى خَلَقَكُم مِّن نَّفۡسٍ وَٰحِدَةٍ وَخَلَقَ مِنۡهَا زَوۡجَهَا وَبَثَّ مِنۡهُمَا رِجَالًا كَثِيرًا وَنِسَآءً ۚ وَٱتَّقُواْ ٱللَّهَ ٱلَّذِى تَسَآءَلُونَ بِهِۦ وَٱلۡأَرۡحَامَ ۚ إِنَّ ٱللَّهَ كَانَ عَلَيۡكُمۡ رَقِيبًا ١

2. ಅನಾಥರಿಗೆ ಅವರ ಆಸ್ತಿಯನ್ನು ಕೊಟ್ಟುಬಿಡಿ. ಶುದ್ಧ (ಮತ್ತು ಧರ್ಮಸಮ್ಮತ) ವಸ್ತುಗಳ ಬದಲಿಗೆ ಹೊಲಸು (ಮತ್ತು ನಿಷಿದ್ಧ) ವಸ್ತುಗಳನ್ನು ಪಡೆಯಬೇಡಿ. ಅವರ ಆಸ್ತಿಯನ್ನು ನಿಮ್ಮ ಆಸ್ತಿಯೊಂದಿಗೆ ಸೇರಿಸಿ ತಿನ್ನಬೇಡಿ. ನಿಶ್ಚಯವಾಗಿಯೂ ಅದು ಗಂಭೀರ ಅಪರಾಧವಾಗಿದೆ.

وَءَاتُواْ ٱلۡيَتَـٰمَىٰٓ أَمۡوَٰلَهُمۡ ۖ وَلَا تَتَبَدَّلُواْ ٱلۡخَبِيثَ بِٱلطَّيِّبِ ۖ وَلَا تَأۡكُلُوٓاْ أَمۡوَٰلَهُمۡ إِلَىٰٓ أَمۡوَٰلِكُمۡ ۚ إِنَّهُۥ كَانَ حُوبًا كَبِيرًا ٢

3. ಅನಾಥ ಹೆಣ್ಣುಮಕ್ಕಳ ವಿಷಯದಲ್ಲಿ ನ್ಯಾಯದಿಂದ ವರ್ತಿಸಲು ನಿಮಗೆ ಸಾಧ್ಯವಾಗದೆಂದು ನೀವು ಭಯಪಡುವುದಾದರೆ, ಇತರ ಮಹಿಳೆಯರಲ್ಲಿ ನಿಮಗೆ ಇಷ್ಟವಾದ ಇಬ್ಬರು, ಮೂವರು ಅಥವಾ ನಾಲ್ವರನ್ನು ವಿವಾಹವಾಗಿರಿ.[1] ಆದರೆ (ಅವರ ನಡುವೆ) ನ್ಯಾಯದಿಂದ ವರ್ತಿಸಲು ನಿಮಗೆ ಸಾಧ್ಯವಾಗದೆಂಬ ಭಯವಿದ್ದರೆ, ಒಬ್ಬಳನ್ನೇ ವಿವಾಹವಾಗಿರಿ.[2] ಅಥವಾ ನಿಮ್ಮ ಅಧೀನದಲ್ಲಿರುವ ಗುಲಾಮಸ್ತ್ರೀಯನ್ನು ವಿವಾಹವಾಗಿರಿ. ನೀವು (ಅನ್ಯಾಯದ ಕಡೆಗೆ) ವಾಲದಿರಲು ಇದು ಅತ್ಯಂತ ಸೂಕ್ತವಾಗಿದೆ.

وَإِنۡ خِفۡتُمۡ أَلَّا تُقۡسِطُواْ فِى ٱلۡيَتَـٰمَىٰ فَٱنكِحُواْ مَا طَابَ لَكُم مِّنَ ٱلنِّسَآءِ مَثۡنَىٰ وَثُلَـٰثَ وَرُبَـٰعَ ۖ فَإِنۡ خِفۡتُمۡ أَلَّا تَعۡدِلُواْ فَوَٰحِدَةً أَوۡ مَا مَلَكَتۡ أَيۡمَـٰنُكُمۡ ۚ ذَٰلِكَ أَدۡنَىٰٓ أَلَّا تَعُولُواْ ٣

4. ಮಹಿಳೆಯರಿಗೆ ಅವರ ವಧುದಕ್ಷಿಣೆಯನ್ನು (ಮಹರ್) ಆತ್ಮತೃಪ್ತಿಯಿಂದ ನೀಡಿರಿ. ಅವರು ಸ್ವಯಂಪ್ರೇರಿತವಾಗಿ ಅದರಲ್ಲಿ ಏನಾದರೂ ಬಿಟ್ಟುಬಿಟ್ಟರೆ ಅದನ್ನು ಸಂತೋಷದಿಂದ ಮತ್ತು ಸಂತೃಪ್ತಿಯಿಂದ ಸೇವಿಸಿರಿ.

وَءَاتُواْ ٱلنِّسَآءَ صَدُقَـٰتِهِنَّ نِحۡلَةً ۚ فَإِن طِبۡنَ لَكُمۡ عَن شَىۡءٍ مِّنۡهُ نَفۡسًا فَكُلُوهُ هَنِيٓـًٔا مَّرِيٓـًٔا ٤

---

[1] ಇಸ್ಲಾಮೀ ಪೂರ್ವ ಕಾಲದಲ್ಲಿ ಅನಾಥ ಹೆಣ್ಣುಮಕ್ಕಳ ಪೋಷಣೆಯ ಹೊಣೆಯನ್ನು ವಹಿಸಿಕೊಂಡವರು ಅವರ ಆಸ್ತಿ ಮತ್ತು ಸೌಂದರ್ಯದ ಮೇಲೆ ಕಣ್ಣಿಟ್ಟು ಅವರನ್ನು ವಿವಾಹವಾಗುತ್ತಿದ್ದರು. ಆದರೆ ಅವರಿಗೆ ವಧುದಕ್ಷಿಣೆ ನೀಡುತ್ತಿರಲಿಲ್ಲ ಮತ್ತು ಅವರೊಡನೆ ನ್ಯಾಯದಿಂದ ವರ್ತಿಸುತ್ತಿರಲಿಲ್ಲ. ಹೀಗೆ ಅವರೊಡನೆ ನ್ಯಾಯದಿಂದ ವರ್ತಿಸಲು ಸಾಧ್ಯವಾಗದು ಎಂದು ಭಯಪಡುವವರು ಅವರನ್ನು ವಿವಾಹವಾಗಬಾರದು.

[2] ಏಕಕಾಲದಲ್ಲಿ ನಾಲ್ಕು ಪತ್ನಿಯರನ್ನು ಹೊಂದುವ ಅನುಮತಿಯಿದೆ. ಆದರೆ ಅವರ ನಡುವೆ ನ್ಯಾಯಯುತವಾಗಿ ವರ್ತಿಸಬೇಕು. ಅದು ಸಾಧ್ಯವಾಗದೆಂಬ ಭಯವಿದ್ದರೆ ಒಬ್ಬಳನ್ನು ಮಾತ್ರ ವಿವಾಹವಾಗಬೇಕು.

5. ಅಲ್ಲಾಹು ನಿಮ್ಮ ಜೀವನೋಪಾಯದ ಮಾರ್ಗವಾಗಿ ಮಾಡಿರುವ ನಿಮ್ಮ ಧನವನ್ನು ವಿವೇಕವಿಲ್ಲದವರಿಗೆ ನೀಡಬೇಡಿ. ಆದರೆ, ಅದರಿಂದ ಅವರಿಗೆ ಆಹಾರ ಮತ್ತು ಬಟ್ಟೆ-ಬರೆಗಳನ್ನು ನೀಡಿರಿ; ಮತ್ತು ಅವರೊಂದಿಗೆ ಉತ್ತಮವಾದ ಮಾತುಗಳನ್ನಾಡಿರಿ.

وَلَا تُؤۡتُواْ ٱلسُّفَهَآءَ أَمۡوَٰلَكُمُ ٱلَّتِي جَعَلَ ٱللَّهُ لَكُمۡ قِيَٰمٗا وَٱرۡزُقُوهُمۡ فِيهَا وَٱكۡسُوهُمۡ وَقُولُواْ لَهُمۡ قَوۡلٗا مَّعۡرُوفٗا ٥

6. ಅನಾಥರು ಪ್ರೌಢರಾಗುವ ತನಕ ಅವರನ್ನು ಪರೀಕ್ಷಿಸುತ್ತಿರಿ. ಅವರಲ್ಲಿ ವಿವೇಕ ಮತ್ತು ವ್ಯವಹಾರ ಪ್ರಜ್ಞೆಯನ್ನು ಕಂಡರೆ, ಅವರ ಆಸ್ತಿಯನ್ನು ಅವರಿಗೆ ಹಸ್ತಾಂತರಿಸಿ. ಅವರು ಪ್ರೌಢರಾಗುತ್ತಿದ್ದಾರೆಂಬ ಭಯದಿಂದ ಅವರ ಆಸ್ತಿಯನ್ನು ಅಗತ್ಯಕ್ಕಿಂತ ಹೆಚ್ಚಾಗಿ ತ್ವರೆಯಿಂದ ತಿನ್ನಬೇಡಿ. ಪೋಷಕನು ಶ್ರೀಮಂತನಾಗಿದ್ದರೆ ಆ ಆಸ್ತಿಯನ್ನು ಮುಟ್ಟದೆ ಸಂಯಮ ತೋರಲಿ. ಆದರೆ ಅವನು ಬಡವನಾಗಿದ್ದರೆ ಅಗತ್ಯಕ್ಕೆ ತಕ್ಕಷ್ಟು ಮಾತ್ರ ತೆಗೆದುಕೊಳ್ಳಲಿ. ಅವರ ಆಸ್ತಿಯನ್ನು ಅವರಿಗೆ ಹಸ್ತಾಂತರಿಸುವಾಗ ಸಾಕ್ಷಿಗಳನ್ನು ನಿಲ್ಲಿಸಿರಿ. ವಿಚಾರಣೆ ಮಾಡುವವನಾಗಿ ಅಲ್ಲಾಹು ಸಾಕು.

وَٱبۡتَلُواْ ٱلۡيَتَٰمَىٰ حَتَّىٰٓ إِذَا بَلَغُواْ ٱلنِّكَاحَ فَإِنۡ ءَانَسۡتُم مِّنۡهُمۡ رُشۡدٗا فَٱدۡفَعُوٓاْ إِلَيۡهِمۡ أَمۡوَٰلَهُمۡۖ وَلَا تَأۡكُلُوهَآ إِسۡرَافٗا وَبِدَارًا أَن يَكۡبَرُواْۚ وَمَن كَانَ غَنِيّٗا فَلۡيَسۡتَعۡفِفۡۖ وَمَن كَانَ فَقِيرٗا فَلۡيَأۡكُلۡ بِٱلۡمَعۡرُوفِۚ فَإِذَا دَفَعۡتُمۡ إِلَيۡهِمۡ أَمۡوَٰلَهُمۡ فَأَشۡهِدُواْ عَلَيۡهِمۡۚ وَكَفَىٰ بِٱللَّهِ حَسِيبٗا ٦

7. ಮಾತಾಪಿತರು ಮತ್ತು ನಿಕಟ ಸಂಬಂಧಿಕರು ಬಿಟ್ಟುಹೋದ ಆಸ್ತಿಯಲ್ಲಿ ಪುರುಷರಿಗೆ ಪಾಲಿದೆ. ಮಾತಾಪಿತರು ಮತ್ತು ನಿಕಟ ಸಂಬಂಧಿಕರು ಬಿಟ್ಟುಹೋದ ಆಸ್ತಿಯಲ್ಲಿ ಮಹಿಳೆಯರಿಗೂ ಪಾಲಿದೆ. ಆಸ್ತಿ ಕಡಿಮೆಯಿರಲಿ ಅಥವಾ ಹೆಚ್ಚಿರಲಿ. ಅದರ ಪಾಲನ್ನು ನಿಗದಿಪಡಿಸಲಾಗಿದೆ.

لِّلرِّجَالِ نَصِيبٞ مِّمَّا تَرَكَ ٱلۡوَٰلِدَانِ وَٱلۡأَقۡرَبُونَ وَلِلنِّسَآءِ نَصِيبٞ مِّمَّا تَرَكَ ٱلۡوَٰلِدَانِ وَٱلۡأَقۡرَبُونَ مِمَّا قَلَّ مِنۡهُ أَوۡ كَثُرَۚ نَصِيبٗا مَّفۡرُوضٗا ٧

8. ಆಸ್ತಿ ಪಾಲು ಮಾಡುವಾಗ (ಬೇರೆ) ಸಂಬಂಧಿಕರು, ಅನಾಥರು ಮತ್ತು ಬಡವರು ಉಪಸ್ಥಿತರಿದ್ದರೆ, ಅವರಿಗೆ ಅದರಿಂದ ಸ್ವಲ್ಪ ಕೊಟ್ಟುಬಿಡಿ. ಅವರೊಂದಿಗೆ ಉತ್ತಮ ಮಾತುಗಳನ್ನಾಡಿರಿ.

وَإِذَا حَضَرَ ٱلۡقِسۡمَةَ أُوْلُواْ ٱلۡقُرۡبَىٰ وَٱلۡيَتَٰمَىٰ وَٱلۡمَسَٰكِينُ فَٱرۡزُقُوهُم مِّنۡهُ وَقُولُواْ لَهُمۡ قَوۡلٗا مَّعۡرُوفٗا ٨

9. ತಮ್ಮ ಅಮಾಯಕ ಮಕ್ಕಳನ್ನು ಬಿಟ್ಟು (ತಾವು ಸತ್ತರೆ ಅವರ ಸ್ಥಿತಿಯೇನಾಗಬಹುದೆಂದು) ಭಯಪಡುವವರು (ಪೋಷಕರು) ಇತರರ ಬಗ್ಗೆಯೂ ಹಾಗೆಯೇ ಭಯಪಡಲಿ. ಅವರು ಅಲ್ಲಾಹನನ್ನು ಭಯಪಡಲಿ ಮತ್ತು ಸರಿಯಾದ ಮಾತುಗಳನ್ನಾಡಲಿ.[1]

وَلۡيَخۡشَ ٱلَّذِينَ لَوۡ تَرَكُواْ مِنۡ خَلۡفِهِمۡ ذُرِّيَّةٗ ضِعَٰفًا خَافُواْ عَلَيۡهِمۡ فَلۡيَتَّقُواْ ٱللَّهَ وَلۡيَقُولُواْ قَوۡلٗا سَدِيدًا ٩

10. ನಿಶ್ಚಯವಾಗಿಯೂ ಅನಾಥರ ಆಸ್ತಿಯನ್ನು ಅನ್ಯಾಯವಾಗಿ ತಿನ್ನುವವರು ಯಾರೋ—ಅವರು ತಮ್ಮ ಉದರಗಳಲ್ಲಿ

إِنَّ ٱلَّذِينَ يَأۡكُلُونَ أَمۡوَٰلَ ٱلۡيَتَٰمَىٰ ظُلۡمًا إِنَّمَا يَأۡكُلُونَ فِي بُطُونِهِمۡ نَارٗاۖ

[1] ತಾನು ಸತ್ತರೆ ತನ್ನ ಪುಟ್ಟ ಮಕ್ಕಳು ಅನಾಥರಾಗುತ್ತಾರೆ. ಅವರು ಇತರರ ಪೋಷಣೆಯಲ್ಲಿ ಬೆಳೆಯಬೇಕಾಗುತ್ತದೆ. ಹೀಗೆ ತನ್ನ ಮಕ್ಕಳ ಭವಿಷ್ಯದ ಬಗ್ಗೆ ಚಿಂತೆ ಮಾಡುವವರು, ಅನಾಥರಾಗಿ ತಮ್ಮ ಪೋಷಣೆಗೆ ಬರುವ ಇತರ ಮಕ್ಕಳ ಬಗ್ಗೆಯೂ ಇದೇ ರೀತಿ ಚಿಂತೆ ಮಾಡಬೇಕು. ಅವರ ವಿಷಯದಲ್ಲಿ ಅಲ್ಲಾಹನನ್ನು ಭಯಪಟ್ಟು ನ್ಯಾಯದಿಂದ ವರ್ತಿಸಬೇಕು.

وَسَيَصۡلَوۡنَ سَعِيرٗا ١٠

ಅಗ್ನಿಯನ್ನೇ ತುಂಬಿಸುತ್ತಾರೆ. ಅವರು ಸದ್ಯವೇ ಧಗಧಗಿಸುವ ಅಗ್ನಿಯಲ್ಲಿ ಉರಿಯುವರು.

---

يُوصِيكُمُ ٱللَّهُ فِيٓ أَوۡلَٰدِكُمۡۖ لِلذَّكَرِ مِثۡلُ حَظِّ
ٱلۡأُنثَيَيۡنِۚ فَإِن كُنَّ نِسَآءٗ فَوۡقَ ٱثۡنَتَيۡنِ فَلَهُنَّ
ثُلُثَا مَا تَرَكَۖ وَإِن كَانَتۡ وَٰحِدَةٗ فَلَهَا ٱلنِّصۡفُۚ
وَلِأَبَوَيۡهِ لِكُلِّ وَٰحِدٖ مِّنۡهُمَا ٱلسُّدُسُ مِمَّا تَرَكَ
إِن كَانَ لَهُۥ وَلَدٞۚ فَإِن لَّمۡ يَكُن لَّهُۥ وَلَدٞ وَوَرِثَهُۥٓ
أَبَوَاهُ فَلِأُمِّهِ ٱلثُّلُثُۚ فَإِن كَانَ لَهُۥٓ إِخۡوَةٞ فَلِأُمِّهِ
ٱلسُّدُسُۚ مِنۢ بَعۡدِ وَصِيَّةٖ يُوصِي بِهَآ أَوۡ دَيۡنٍۗ
ءَابَآؤُكُمۡ وَأَبۡنَآؤُكُمۡ لَا تَدۡرُونَ أَيُّهُمۡ أَقۡرَبُ
لَكُمۡ نَفۡعٗاۚ فَرِيضَةٗ مِّنَ ٱللَّهِۗ إِنَّ ٱللَّهَ كَانَ
عَلِيمًا حَكِيمٗا ١١

11. ನಿಮ್ಮ ಮಕ್ಕಳ (ಉತ್ತರಾಧಿಕಾರದ) ವಿಷಯದಲ್ಲಿ ಅಲ್ಲಾಹು ನಿಮಗೆ ಆದೇಶಿಸುತ್ತಾನೆ. ಒಬ್ಬ ಪುರುಷನ ಪಾಲು ಇಬ್ಬರು ಮಹಿಳೆಯರ ಪಾಲಿಗೆ ಸಮಾನವಾಗಿದೆ. ಮೃತನಿಗೆ ಹೆಣ್ಣು ಮಕ್ಕಳು ಮಾತ್ರವಿದ್ದು, ಅವರು ಇಬ್ಬರಿಗಿಂತ ಹೆಚ್ಚಿದ್ದರೆ,[1] ಅವನು ಬಿಟ್ಟು ಹೋದ ಆಸ್ತಿಯ ಮೂರನೇ ಎರಡು ಭಾಗವು ಅವರಿಗೆ ದೊರೆಯುತ್ತದೆ. ಒಬ್ಬ ಮಗಳು ಮಾತ್ರವಿದ್ದರೆ ಅವಳಿಗೆ ಅರ್ಧ ಭಾಗ ದೊರೆಯುತ್ತದೆ. ಮೃತನಿಗೆ ಮಕ್ಕಳಿದ್ದರೆ ಅವನ ಮಾತಾಪಿತರಲ್ಲಿ ಪ್ರತಿಯೊಬ್ಬರಿಗೂ ಅವನು ಬಿಟ್ಟುಹೋದ ಆಸ್ತಿಯ ಆರನೇ ಒಂದು ಭಾಗ ದೊರೆಯುತ್ತದೆ. ಅವನು ಸಂತಾನರಹಿತನಾಗಿದ್ದು ಮಾತಾಪಿತರು ಅವನ ವಾರಸುದಾರರಾಗಿದ್ದರೆ, ಅವನ ತಾಯಿಗೆ ಮೂರನೇ ಒಂದು ಭಾಗ ದೊರೆಯುತ್ತದೆ.[2] ಅವನಿಗೆ ಸಹೋದರರಿದ್ದರೆ (ಮತ್ತು / ಅಥವಾ ಸಹೋದರಿಯರಿದ್ದರೆ) ಅವನ ತಾಯಿಗೆ ಆರನೇ ಒಂದು ಭಾಗ ದೊರೆಯುತ್ತದೆ.[3] ಅವನು ಮಾಡಿರುವ ಉಯಿಲು ಮತ್ತು ಸಾಲವಿದ್ದರೆ ಅದನ್ನು ತೀರಿಸಿದ ನಂತರ. ನಿಮ್ಮ ತಂದೆ-ತಾಯಿ ಮತ್ತು ಮಕ್ಕಳಲ್ಲಿ ಯಾರು ನಿಮಗೆ ಹೆಚ್ಚು ಉಪಕಾರ ಮಾಡುವರೆಂದು ನಿಮಗೆ ತಿಳಿದಿಲ್ಲ. ಇವು ಅಲ್ಲಾಹು ನಿಗದಿಪಡಿಸಿದ ಪಾಲುಗಳು. ನಿಶ್ಚಯವಾಗಿಯೂ ಅಲ್ಲಾಹು ಎಲ್ಲವನ್ನೂ ತಿಳಿದವನು ಮತ್ತು ವಿವೇಕಪೂರ್ಣನಾಗಿದ್ದಾನೆ.

---

وَلَكُمۡ نِصۡفُ مَا تَرَكَ أَزۡوَٰجُكُمۡ إِن لَّمۡ
يَكُن لَّهُنَّ وَلَدٞۚ فَإِن كَانَ لَهُنَّ وَلَدٞ فَلَكُمُ
ٱلرُّبُعُ مِمَّا تَرَكۡنَۚ مِنۢ بَعۡدِ وَصِيَّةٖ يُوصِينَ بِهَآ
أَوۡ دَيۡنٖۚ وَلَهُنَّ ٱلرُّبُعُ مِمَّا تَرَكۡتُمۡ إِن لَّمۡ يَكُن
لَّكُمۡ وَلَدٞۚ فَإِن كَانَ لَكُمۡ وَلَدٞ فَلَهُنَّ ٱلثُّمُنُ
مِمَّا تَرَكۡتُمۚ مِّنۢ بَعۡدِ وَصِيَّةٖ تُوصُونَ بِهَآ أَوۡ دَيۡنٖۗ
وَإِن كَانَ رَجُلٞ يُورَثُ كَلَٰلَةً أَوِ ٱمۡرَأَةٞ وَلَهُۥٓ

12. ನಿಮ್ಮ ಪತ್ನಿಯರಿಗೆ ಮಕ್ಕಳಿಲ್ಲದಿದ್ದರೆ, ಅವರು ಬಿಟ್ಟುಹೋದ ಆಸ್ತಿಯಲ್ಲಿ ಅರ್ಧ ಭಾಗವು ನಿಮಗೆ ದೊರೆಯುತ್ತದೆ. ಅವರಿಗೆ ಮಕ್ಕಳಿದ್ದರೆ ಅವರು ಬಿಟ್ಟು ಹೋದ ಆಸ್ತಿಯಲ್ಲಿ ನಾಲ್ಕನೇ ಒಂದು ಭಾಗವು ನಿಮಗೆ ದೊರೆಯುತ್ತದೆ. ಇದು ಅವರು ಮಾಡುವ ಉಯಿಲು ಮತ್ತು ಸಾಲವನ್ನು ತೀರಿಸಿದ ನಂತರ. ನಿಮಗೆ ಮಕ್ಕಳಿಲ್ಲದಿದ್ದರೆ, ನೀವು ಬಿಟ್ಟುಹೋದ ಆಸ್ತಿಯಲ್ಲಿ ನಾಲ್ಕನೇ ಒಂದು ಭಾಗವು ಅವರಿಗೆ (ಪತ್ನಿಯರಿಗೆ) ದೊರೆಯುತ್ತದೆ. ನಿಮಗೆ ಮಕ್ಕಳಿದ್ದರೆ, ನೀವು ಬಿಟ್ಟುಹೋದ ಆಸ್ತಿಯಲ್ಲಿ ಎಂಟನೇ ಒಂದು

---

[1] ಇಬ್ಬರೇ ಹೆಣ್ಣುಮಕ್ಕಳಿದ್ದರೂ ಅವರಿಗೆ ಮೂರನೇ ಎರಡು ಭಾಗವು ದೊರೆಯುತ್ತದೆ.

[2] ಉಳಿದ ಮೂರನೇ ಎರಡು ಭಾಗ ತಂದೆಗೆ ದೊರೆಯುತ್ತದೆ.

[3] ಮೃತನಿಗೆ ಗಂಡುಮಕ್ಕಳು ಅಥವಾ ತಂದೆ ಇಲ್ಲದಿದ್ದರೆ ಮಾತ್ರ ಸಹೋದರ (ಅಥವಾ ಸಹೋದರರು) ವಾರಸುದಾರರಾಗುತ್ತಾರೆ. ತಾಯಿ ಮತ್ತು ಸಹೋದರರು ಮಾತ್ರವಿದ್ದರೆ ಆರನೇ ಒಂದನ್ನು ಕಳೆದು ಉಳಿದ ಆಸ್ತಿಯನ್ನು ಸಹೋದರರು ಪಾಲು ಮಾಡಬೇಕು. ಒಬ್ಬ ಸಹೋದರ ಮತ್ತು ತಾಯಿ ಮಾತ್ರ ಇದ್ದರೆ ತಾಯಿಗೆ ಮೂರನೇ ಒಂದು ಭಾಗ ಮತ್ತು ಸಹೋದರನಿಗೆ ಮೂರನೇ ಎರಡು ಭಾಗವು ದೊರೆಯುತ್ತದೆ. ಸಹೋದರರು ಇಲ್ಲದೆ, ತಾಯಿ ಮತ್ತು ಸಹೋದರಿಯರು ಮಾತ್ರ ಇದ್ದರೆ ತಾಯಿಗೆ ಆರನೇ ಒಂದು ಭಾಗ ದೊರೆಯುತ್ತದೆ.

أَخٌ أَوۡ أُخۡتٞ فَلِكُلِّ وَٰحِدٖ مِّنۡهُمَا ٱلسُّدُسُۚ فَإِن
كَانُوٓاْ أَكۡثَرَ مِن ذَٰلِكَ فَهُمۡ شُرَكَآءُ فِي ٱلثُّلُثِۚ
مِنۢ بَعۡدِ وَصِيَّةٖ يُوصَىٰ بِهَآ أَوۡ دَيۡنٍ غَيۡرَ مُضَآرّٖۚ
وَصِيَّةٗ مِّنَ ٱللَّهِۗ وَٱللَّهُ عَلِيمٌ حَلِيمٞ ١٢

ಭಾಗವು ಅವರಿಗೆ ದೊರೆಯುತ್ತದೆ. ಇದು ನೀವು ಮಾಡುವ ಉಯಿಲು ಮತ್ತು ಸಾಲವನ್ನು ತೀರಿಸಿದ ನಂತರ. ವಾರಸು ಆಸ್ತಿಯನ್ನು ಬಿಟ್ಟು ಹೋಗುವ ಪುರುಷ ಅಥವಾ ಮಹಿಳೆಗೆ ತಂದೆ-ತಾಯಿ ಹಾಗೂ ಮಕ್ಕಳಿಲ್ಲದೆ, ಕೇವಲ ಸಹೋದರ ಅಥವಾ ಸಹೋದರಿಯಿದ್ದರೆ, ಆ ಇಬ್ಬರಲ್ಲಿ ಪ್ರತಿಯೊಬ್ಬರಿಗೂ ಆರನೇ ಒಂದು ಭಾಗವು ದೊರೆಯುತ್ತದೆ. ಅವರು ಇಬ್ಬರಿಗಿಂತ ಹೆಚ್ಚಿದ್ದರೆ, ಅವರು ಮೂರನೇ ಒಂದು ಭಾಗದಲ್ಲಿ ಸಮಾನ ಪಾಲುದಾರರಾಗುತ್ತಾರೆ. ಇದು ಹಾನಿಕರವಲ್ಲದ ಉಯಿಲು[1] ಮತ್ತು ಸಾಲವನ್ನು ತೀರಿಸಿದ ನಂತರ. ಅಲ್ಲಾಹು ಎಲ್ಲವನ್ನೂ ತಿಳಿದವನು ಮತ್ತು ಸಹಿಷ್ಣುತೆಯುಳ್ಳವನಾಗಿದ್ದಾನೆ.

---

تِلۡكَ حُدُودُ ٱللَّهِۚ وَمَن يُطِعِ ٱللَّهَ وَرَسُولَهُۥ
يُدۡخِلۡهُ جَنَّٰتٖ تَجۡرِي مِن تَحۡتِهَا ٱلۡأَنۡهَٰرُ
خَٰلِدِينَ فِيهَاۚ وَذَٰلِكَ ٱلۡفَوۡزُ ٱلۡعَظِيمُ ١٣

13. ಇವು ಅಲ್ಲಾಹನ ಎಲ್ಲೆಗಳು. ಯಾರು ಅಲ್ಲಾಹನನ್ನು ಮತ್ತು ಅವನ ಸಂದೇಶವಾಹಕರನ್ನು ಅನುಸರಿಸುತ್ತಾನೋ—ಅವನನ್ನು ಅಲ್ಲಾಹು ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳಿಗೆ ಪ್ರವೇಶ ಮಾಡಿಸುವನು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅದೇ ಮಹಾ ವಿಜಯ.

---

وَمَن يَعۡصِ ٱللَّهَ وَرَسُولَهُۥ وَيَتَعَدَّ حُدُودَهُۥ
يُدۡخِلۡهُ نَارًا خَٰلِدٗا فِيهَا وَلَهُۥ عَذَابٞ مُّهِينٞ ١٤

14. ಯಾರು ಅಲ್ಲಾಹನಿಗೆ ಮತ್ತು ಅವನ ಸಂದೇಶವಾಹಕರಿಗೆ ಅವಿಧೇಯತೆ ತೋರುತ್ತಾನೋ ಮತ್ತು ಅವನ ಎಲ್ಲೆಗಳನ್ನು ಮೀರುತ್ತಾನೋ—ಅವನನ್ನು ಅಲ್ಲಾಹು ನರಕಾಗ್ನಿಗೆ ಪ್ರವೇಶ ಮಾಡಿಸುವನು. ಅವನು ಅದರಲ್ಲಿ ಶಾಶ್ವತವಾಗಿ ವಾಸಿಸುವನು. ಅವನಿಗೆ ಅಪಮಾನಕರ ಶಿಕ್ಷೆಯಿದೆ.

---

وَٱلَّٰتِي يَأۡتِينَ ٱلۡفَٰحِشَةَ مِن نِّسَآئِكُمۡ
فَٱسۡتَشۡهِدُواْ عَلَيۡهِنَّ أَرۡبَعَةٗ مِّنكُمۡۖ فَإِن
شَهِدُواْ فَأَمۡسِكُوهُنَّ فِي ٱلۡبُيُوتِ حَتَّىٰ يَتَوَفَّىٰهُنَّ
ٱلۡمَوۡتُ أَوۡ يَجۡعَلَ ٱللَّهُ لَهُنَّ سَبِيلٗا ١٥

15. ನಿಮ್ಮ ಮಹಿಳೆಯರಲ್ಲಿ ಯಾರು ಅಶ್ಲೀಲ ಕೃತ್ಯವನ್ನು ಮಾಡುತ್ತಾರೋ—ಅವರಿಗೆದುರಾಗಿ ನಿಮ್ಮಲ್ಲಿನ ನಾಲ್ಕು ಮಂದಿಯನ್ನು ಸಾಕ್ಷಿ ನಿಲ್ಲಿಸಿರಿ. ಅವರು ಸಾಕ್ಷಿ ನಿಂತರೆ ಅವರು (ಮಹಿಳೆಯರು) ಮರಣವನ್ನಪ್ಪುವ ತನಕ ಅಥವಾ ಅಲ್ಲಾಹು ಅವರಿಗೊಂದು ಮಾರ್ಗವನ್ನು ಮಾಡಿಕೊಡುವ ತನಕ ಅವರನ್ನು ನೀವು ಮನೆಗಳಲ್ಲಿ ತಡೆದಿರಿಸಿರಿ.[2]

---

وَٱلَّذَانِ يَأۡتِيَٰنِهَا مِنكُمۡ فَـَٔاذُوهُمَاۖ فَإِن تَابَا

16. ನಿಮ್ಮಲ್ಲಿ ಯಾರು ಅಶ್ಲೀಲ ಕೃತ್ಯವನ್ನು ಮಾಡುತ್ತಾರೋ ಅವರಿಗೆ

---

[1] ಒಟ್ಟು ಆಸ್ತಿಯ ಮೂರನೇ ಒಂದು ಭಾಗವನ್ನು ಮಾತ್ರ ಉಯಿಲು ಮಾಡಬಹುದು. ಅದಕ್ಕಿಂತ ಹೆಚ್ಚು ಉಯಿಲು ಮಾಡುವುದು ವಾರಸುದಾರರಿಗೆ ಮಾಡುವ ಅನ್ಯಾಯವಾಗಿದೆ. ಹಾನಿಕರ ಉಯಿಲು ಎಂದರೆ ವಾರಸುದಾರರಲ್ಲಿರುವ ದ್ವೇಷದಿಂದ ತನ್ನ ಆಸ್ತಿಯಲ್ಲಿ ಅವರಿಗೆ ಹಕ್ಕು ಸಿಗಬಾರದೆಂದು ತನ್ನ ಆಸ್ತಿಯನ್ನು ತನಗೆ ಇಷ್ಟವಾದ ಬೇರೊಬ್ಬ ವ್ಯಕ್ತಿಗೆ ಉಯಿಲು ಮಾಡುವುದು.

[2] ಇದು ಇಸ್ಲಾಮಿನ ಆರಂಭಕಾಲದಲ್ಲಿ ವ್ಯಭಿಚಾರಕ್ಕೆ ನೀಡಲಾಗುತ್ತಿದ್ದ ತಾತ್ಕಾಲಿಕ ಶಿಕ್ಷೆಯಾಗಿದೆ. ನಂತರ ವಿವಾಹಿತ ಪುರುಷರು ಮತ್ತು ಮಹಿಳೆಯರು ವ್ಯಭಿಚಾರ ಮಾಡಿದರೆ, ಅವರಿಗೆ ಕಲ್ಲೆಸೆದು ಕೊಲ್ಲುವ ಶಿಕ್ಷೆ ಮತ್ತು ವಿವಾಹಿತರಲ್ಲದ ಪುರುಷರು ಮತ್ತು ಮಹಿಳೆಯರು ವ್ಯಭಿಚಾರ ಮಾಡಿದರೆ ಅವರಿಗೆ 100 ಛಡಿಯೇಟಿನ ಶಿಕ್ಷೆಯನ್ನು ಅಂತಿಮಗೊಳಿಸಲಾಯಿತು.

وَأَصۡلَحَا فَأَعۡرِضُواْ عَنۡهُمَآۗ إِنَّ ٱللَّهَ كَانَ تَوَّابٗا رَّحِيمًا ﴿١٦﴾

(ಇಬ್ಬರಿಗೂ) ತೊಂದರೆ ಕೊಡಿ. ಅವರಿಬ್ಬರೂ ಪಶ್ಚಾತ್ತಾಪ-ಪಟ್ಟು ನಡತೆಯನ್ನು ಸರಿಪಡಿಸಿದರೆ ಅವರನ್ನು ಬಿಟ್ಟುಬಿಡಿ.[1] ನಿಶ್ಚಯವಾಗಿಯೂ ಅಲ್ಲಾಹು ಪಶ್ಚಾತ್ತಾಪ ಸ್ವೀಕರಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

إِنَّمَا ٱلتَّوۡبَةُ عَلَى ٱللَّهِ لِلَّذِينَ يَعۡمَلُونَ ٱلسُّوٓءَ بِجَهَٰلَةٖ ثُمَّ يَتُوبُونَ مِن قَرِيبٖ فَأُوْلَٰٓئِكَ يَتُوبُ ٱللَّهُ عَلَيۡهِمۡۗ وَكَانَ ٱللَّهُ عَلِيمًا حَكِيمٗا ﴿١٧﴾

17. ಅಲ್ಲಾಹು ಪಶ್ಚಾತ್ತಾಪವನ್ನು ಸ್ವೀಕರಿಸುವುದು ಅಜ್ಞಾನದಿಂದ ತಪ್ಪು ಮಾಡಿ (ಅದು ತಪ್ಪೆಂದು ತಿಳಿದಾಗ) ತಡಮಾಡದೆ ಪಶ್ಚಾತ್ತಾ-ಪಪಡುವವರಿಂದ ಮಾತ್ರ. ಅವರ ಪಶ್ಚಾತ್ತಾಪವನ್ನು ಅಲ್ಲಾಹು ಸ್ವೀಕರಿಸುತ್ತಾನೆ. ಅಲ್ಲಾಹು ಎಲ್ಲವನ್ನು ತಿಳಿದವನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَلَيۡسَتِ ٱلتَّوۡبَةُ لِلَّذِينَ يَعۡمَلُونَ ٱلسَّيِّـَٔاتِ حَتَّىٰٓ إِذَا حَضَرَ أَحَدَهُمُ ٱلۡمَوۡتُ قَالَ إِنِّي تُبۡتُ ٱلۡـَٰٔنَ وَلَا ٱلَّذِينَ يَمُوتُونَ وَهُمۡ كُفَّارٌۚ أُوْلَٰٓئِكَ أَعۡتَدۡنَا لَهُمۡ عَذَابًا أَلِيمٗا ﴿١٨﴾

18. ತಪ್ಪು ಮಾಡುತ್ತಲೇ ಇದ್ದು, ಸಾವು ಸನ್ನಿಹಿತವಾದಾಗ, "ನಾನು ಪಶ್ಚಾತ್ತಾಪಪಟ್ಟಿದ್ದೇನೆ" ಎಂದು ಹೇಳುವವರ ಪಶ್ಚಾತ್ತಾಪವನ್ನು ಸ್ವೀಕರಿಸಲಾಗದು. ಸತ್ಯನಿಷೇಧಿಗಳಾಗಿ ಸಾಯುವವರ ಪಶ್ಚಾತ್ತಾ-ಪವನ್ನೂ ಸ್ವೀಕರಿಸಲಾಗದು. ಅವರಿಗೆ ನಾವು ಯಾತನಾಮಯ ಶಿಕ್ಷೆಯನ್ನು ಸಿದ್ಧಗೊಳಿಸಿದ್ದೇವೆ.

يَٰٓأَيُّهَا ٱلَّذِينَ ءَامَنُواْ لَا يَحِلُّ لَكُمۡ أَن تَرِثُواْ ٱلنِّسَآءَ كَرۡهٗاۖ وَلَا تَعۡضُلُوهُنَّ لِتَذۡهَبُواْ بِبَعۡضِ مَآ ءَاتَيۡتُمُوهُنَّ إِلَّآ أَن يَأۡتِينَ بِفَٰحِشَةٖ مُّبَيِّنَةٖۚ وَعَاشِرُوهُنَّ بِٱلۡمَعۡرُوفِۚ فَإِن كَرِهۡتُمُوهُنَّ فَعَسَىٰٓ أَن تَكۡرَهُواْ شَيۡـٔٗا وَيَجۡعَلَ ٱللَّهُ فِيهِ خَيۡرٗا كَثِيرٗا ﴿١٩﴾

19. ಓ ಸತ್ಯವಿಶ್ವಾಸಿಗಳೇ! ಮಹಿಳೆಯರನ್ನು ಬಲವಂತದಿಂದ ಉತ್ತ-ರಾಧಿಕಾರವಾಗಿ ಪಡೆಯುವುದು ನಿಮಗೆ ಧರ್ಮಸಮ್ಮತವಲ್ಲ.[2] ನೀವು ಅವರಿಗೆ (ಪತ್ನಿಯರಿಗೆ) ನೀಡಿರುವುದರಲ್ಲಿ ಒಂದಂಶವನ್ನು ಹಿಂದಕ್ಕೆ ಪಡೆಯಲು ಅವರನ್ನು ತಡೆದಿರಿಸಬೇಡಿ— ಅವರು ಬಹಿರಂಗವಾಗಿ ಏನಾದರೂ ಅಶ್ಲೀಲ ಕೃತ್ಯವೆಸಗದಿದ್ದರೆ. ಅವರೊಂದಿಗೆ ಉತ್ತಮವಾಗಿ ವರ್ತಿಸಿರಿ. ನೀವು ಅವರನ್ನು ದ್ವೇಷಿಸುವುದಾದರೆ, ಬಹುಶಃ ನೀವು ದ್ವೇಷಿಸುವ ಒಂದು ವಸ್ತುವಿನಲ್ಲಿ ಅಲ್ಲಾಹು ಅತ್ಯಧಿಕ ಒಳಿತನ್ನಿಟ್ಟಿರಬಹುದು.

وَإِنۡ أَرَدتُّمُ ٱسۡتِبۡدَالَ زَوۡجٖ مَّكَانَ زَوۡجٖ وَءَاتَيۡتُمۡ إِحۡدَىٰهُنَّ قِنطَارٗا فَلَا تَأۡخُذُواْ مِنۡهُ شَيۡـًٔاۚ أَتَأۡخُذُونَهُۥ بُهۡتَٰنٗا وَإِثۡمٗا مُّبِينٗا ﴿٢٠﴾

20. ನೀವು ಒಬ್ಬ ಪತ್ನಿಯ ಬದಲಿಗೆ ಇನ್ನೊಬ್ಬ ಪತ್ನಿಯನ್ನು ತರಲು ಉದ್ದೇಶಿಸಿದರೆ, ಮತ್ತು ಅವರಲ್ಲಿ ಒಬ್ಬಳಿಗೆ ನೀವು ದೊಡ್ಡ ಮೊತ್ತವನ್ನು ಕೊಟ್ಟಿದ್ದರೆ, ಅದರಿಂದ ಏನನ್ನೂ ಹಿಂದಕ್ಕೆ ಪಡೆಯಬೇಡಿ. ಸುಳ್ಳಾರೋಪದಿಂದ ಮತ್ತು ಸ್ಪಷ್ಟ ಪಾಪದಿಂದ ನೀವು ಅದನ್ನು ಹಿಂದಕ್ಕೆ ಪಡೆಯುವಿರಾ?

[1] ಕೆಲವು ವ್ಯಾಖ್ಯಾನಕಾರರು ಇದು ಸಲಿಂಗಕಾಮ ಮಾಡುವವರ ಬಗ್ಗೆ ಎಂದಿದ್ದಾರೆ. ಕೆಲವರು ಇದು ಅವಿವಾಹಿತ ಪುರುಷರು ಮತ್ತು ಮಹಿಳೆಯರ ಬಗ್ಗೆ ಎಂದಿದ್ದಾರೆ. 15 ನೇ ವಚನವು ವಿವಾಹಿತ ಪುರುಷರು ಮತ್ತು ಮಹಿಳೆಯರ ಬಗ್ಗೆ ಎಂದು ಅವರು ಅಭಿಪ್ರಾಯಪಡುತ್ತಾರೆ. ಕೆಲವರು ಇದು ವಿವಾಹಿತ ಮತ್ತು ಅವಿವಾಹಿತ ಪುರುಷರು ಮತ್ತು ಮಹಿಳೆಯರ ಬಗ್ಗೆ ಎನ್ನುತ್ತಾರೆ. ಏನೇ ಆದರೂ ಇದು ಇಸ್ಲಾಮಿನ ಆರಂಭಕಾಲದ-ಲ್ಲಿದ್ದ ತಾತ್ಕಾಲಿಕ ಶಿಕ್ಷೆಯಾಗಿದೆ. ಅಂತಿಮ ಶಿಕ್ಷೆ ಅವತೀರ್ಣವಾದ ಬಳಿಕ ಇದು ರದ್ದುಗೊಂಡಿದೆ.

[2] ಇಸ್ಲಾಂ ಪೂರ್ವ ಕಾಲದಲ್ಲಿ ಮೃತನ ಆಸ್ತಿಯನ್ನು ಹಂಚಿಕೊಳ್ಳುವಾಗ ಅವನ ಪತ್ನಿಯರನ್ನೂ ಅವರ ಇಚ್ಛೆಗೆ ವಿರುದ್ಧವಾಗಿ ಹಂಚಿಕೊಳ್ಳುತ್ತಿದ್ದರು.

21. ನೀವು ಪರಸ್ಪರ ಒಂದಾಗಿದ್ದು, ಅವರು ನಿಮ್ಮಿಂದ ಬಲಿಷ್ಠ ಕರಾರನ್ನು ಪಡೆದಿರುವಾಗ ನೀವು ಹೇಗೆ ತಾನೇ ಅದನ್ನು ಹಿಂದಕ್ಕೆ ಪಡೆಯುವಿರಿ?

وَكَيۡفَ تَأۡخُذُونَهُۥ وَقَدۡ أَفۡضَىٰ بَعۡضُكُمۡ إِلَىٰ بَعۡضٖ وَأَخَذۡنَ مِنكُم مِّيثَٰقًا غَلِيظٗا ٢١

22. ನಿಮ್ಮ ತಂದೆಯರು ವಿವಾಹವಾದ ಮಹಿಳೆಯರನ್ನು ನೀವು ವಿವಾಹವಾಗಬಾರದು. ಈಗಾಗಲೇ ಸಂಭವಿಸಿದವುಗಳ ಹೊರತು. ನಿಶ್ಚಯವಾಗಿಯೂ ಅದು ಅಶ್ಲೀಲ, ಅಸಹ್ಯ ಮತ್ತು ಕೆಟ್ಟ ಮಾರ್ಗವಾಗಿದೆ.

وَلَا تَنكِحُواْ مَا نَكَحَ ءَابَآؤُكُم مِّنَ ٱلنِّسَآءِ إِلَّا مَا قَدۡ سَلَفَۚ إِنَّهُۥ كَانَ فَٰحِشَةٗ وَمَقۡتٗا وَسَآءَ سَبِيلًا ٢٢

23. ನಿಮಗೆ ವಿವಾಹವಾಗಲು ನಿಷಿದ್ಧವಾಗಿರುವವರು ಯಾರೆಂದರೆ—ನಿಮ್ಮ ತಾಯಂದಿರು, ಹೆಣ್ಣುಮಕ್ಕಳು, ಸಹೋದರಿಯರು, ತಂದೆಯ ಸಹೋದರಿಯರು, ತಾಯಿಯ ಸಹೋದರಿಯರು, ಸಹೋದರರ ಹೆಣ್ಣುಮಕ್ಕಳು, ಸಹೋದರಿಯರ ಹೆಣ್ಣುಮಕ್ಕಳು, ನಿಮಗೆ ಸ್ತನಪಾನ ಮಾಡಿದ ತಾಯಂದಿರು, ಸ್ತನಪಾನ ಸಂಬಂಧದಲ್ಲಿ ಸಹೋದರಿಗಳಾಗಿರುವವರು, ನಿಮ್ಮ ಪತ್ನಿಯರ ತಾಯಂದಿರು, ನಿಮ್ಮ ಪೋಷಣೆಯಲ್ಲಿ ಬೆಳೆಯುತ್ತಿರುವ ನಿಮ್ಮ ಪತ್ನಿಯರ ಹೆಣ್ಣುಮಕ್ಕಳು—ನೀವು ಆ ಪತ್ನಿಯರೊಡನೆ ಲೈಂಗಿಕ ಸಂಪರ್ಕ ಮಾಡಿದ್ದರೆ—ನೀವು ಅವರೊಡನೆ ಲೈಂಗಿಕ ಸಂಪರ್ಕ ಮಾಡಿರದಿದ್ದರೆ ಆ ಸಾಕುಪುತ್ರಿಯರನ್ನು ವಿವಾಹವಾಗುವುದರಲ್ಲಿ ದೋಷವಿಲ್ಲ; ನಿಮ್ಮ ಬೆನ್ನೆಲುಬಿನಿಂದ ಹುಟ್ಟಿದ ಗಂಡುಮಕ್ಕಳ ಪತ್ನಿಯರು ಮತ್ತು ಇಬ್ಬರು ಸಹೋದರಿಯರನ್ನು ಏಕಕಾಲದಲ್ಲಿ ವಿವಾಹವಾಗುವುದು—ಈಗಾಗಲೇ ಸಂಭವಿಸಿರುವುದರ ಹೊರತು. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

حُرِّمَتۡ عَلَيۡكُمۡ أُمَّهَٰتُكُمۡ وَبَنَاتُكُمۡ وَأَخَوَٰتُكُمۡ وَعَمَّٰتُكُمۡ وَخَٰلَٰتُكُمۡ وَبَنَاتُ ٱلۡأَخِ وَبَنَاتُ ٱلۡأُخۡتِ وَأُمَّهَٰتُكُمُ ٱلَّٰتِيٓ أَرۡضَعۡنَكُمۡ وَأَخَوَٰتُكُم مِّنَ ٱلرَّضَٰعَةِ وَأُمَّهَٰتُ نِسَآئِكُمۡ وَرَبَٰٓئِبُكُمُ ٱلَّٰتِي فِي حُجُورِكُم مِّن نِّسَآئِكُمُ ٱلَّٰتِي دَخَلۡتُم بِهِنَّ فَإِن لَّمۡ تَكُونُواْ دَخَلۡتُم بِهِنَّ فَلَا جُنَاحَ عَلَيۡكُمۡ وَحَلَٰٓئِلُ أَبۡنَآئِكُمُ ٱلَّذِينَ مِنۡ أَصۡلَٰبِكُمۡ وَأَن تَجۡمَعُواْ بَيۡنَ ٱلۡأُخۡتَيۡنِ إِلَّا مَا قَدۡ سَلَفَۗ إِنَّ ٱللَّهَ كَانَ غَفُورٗا رَّحِيمٗا ٢٣

24. ವಿವಾಹಿತ ಮಹಿಳೆಯರು (ಕೂಡ ನಿಮಗೆ ನಿಷಿದ್ಧವಾಗಿದ್ದಾರೆ). ಆದರೆ ನಿಮ್ಮ ಅಧೀನದಲ್ಲಿರುವ ಗುಲಾಮಸ್ತ್ರೀಯರ ಹೊರತು. ಇವು ಅಲ್ಲಾಹು ಕಡ್ಡಾಯಗೊಳಿಸಿದ ನಿಯಮಗಳಾಗಿವೆ. ಇವರ ಹೊರತಾಗಿರುವ ಎಲ್ಲಾ ಮಹಿಳೆಯರು ನಿಮಗೆ ಧರ್ಮಸಮ್ಮತವಾಗಿದ್ದಾರೆ. ನೀವು ಪರಿಶುದ್ಧ ಜೀವನವನ್ನು ಬಯಸುವವರು ಮತ್ತು ಅನೈತಿಕತೆಯನ್ನು ಬಯಸದವರಾಗಿದ್ದರೆ, ನಿಮ್ಮ ಧನವನ್ನು ನೀಡಿ ಇವರನ್ನು ವಿವಾಹವಾಗಬಹುದು. ನೀವು ಯಾರಿಂದ ಸುಖವನ್ನು ಪಡೆಯಲು ಬಯಸುತ್ತೀರೋ ಅವರಿಗೆ ನಿಶ್ಚಯಿಸಲಾದ ವಧುದಕ್ಷಿಣೆಯನ್ನು (ಮಹರ್) ಕೊಟ್ಟುಬಿಡಿ. ವಧುದಕ್ಷಿಣೆಯನ್ನು ನಿಶ್ಚಯಿಸಲಾದ ಬಳಿಕ ನೀವು ಪರಸ್ಪರ ತೃಪ್ತಿಯಿಂದ ವಿನಾಯಿತಿ ತೋರಿದರೆ ಅದರಲ್ಲಿ ನಿಮಗೆ

وَٱلۡمُحۡصَنَٰتُ مِنَ ٱلنِّسَآءِ إِلَّا مَا مَلَكَتۡ أَيۡمَٰنُكُمۡۖ كِتَٰبَ ٱللَّهِ عَلَيۡكُمۡۚ وَأُحِلَّ لَكُم مَّا وَرَآءَ ذَٰلِكُمۡ أَن تَبۡتَغُواْ بِأَمۡوَٰلِكُم مُّحۡصِنِينَ غَيۡرَ مُسَٰفِحِينَۚ فَمَا ٱسۡتَمۡتَعۡتُم بِهِۦ مِنۡهُنَّ فَـَٔاتُوهُنَّ أُجُورَهُنَّ فَرِيضَةٗۚ وَلَا جُنَاحَ عَلَيۡكُمۡ فِيمَا تَرَٰضَيۡتُم بِهِۦ مِنۢ بَعۡدِ ٱلۡفَرِيضَةِۚ إِنَّ ٱللَّهَ كَانَ عَلِيمًا حَكِيمٗا ٢٤

ದೋಷವಿಲ್ಲ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲವನ್ನೂ ತಿಳಿದವನು ಮತ್ತು ವಿವೇಕಪೂರ್ಣನಾಗಿದ್ದಾನೆ.

---

25. ಸತ್ಯವಿಶ್ವಾಸಿಗಳಾದ ಸ್ವತಂತ್ರ ಮಹಿಳೆಯರನ್ನು ವಿವಾಹವಾಗಲು ನಿಮಗೆ ಆರ್ಥಿಕ ಸಾಮರ್ಥ್ಯವಿಲ್ಲದಿದ್ದರೆ, ನಿಮ್ಮ ಅಧೀನದಲ್ಲಿರುವ ಗುಲಾಮಸ್ತ್ರೀಯರಲ್ಲಿ ಒಬ್ಬಳನ್ನು (ಪತ್ನಿಯಾಗಿ ಸ್ವೀಕರಿಸಬಹುದು). ನಿಮ್ಮ ವಿಶ್ವಾಸದ ಬಗ್ಗೆ ಅಲ್ಲಾಹನಿಗೆ ಚೆನ್ನಾಗಿ ತಿಳಿದಿದೆ. ನೀವು ಒಬ್ಬರು ಇನ್ನೊಬ್ಬರಿಂದ ಉಂಟಾಗಿದ್ದೀರಿ. ಅವರ ಯಜಮಾನರ ಒಪ್ಪಿಗೆ ಪಡೆದು ಅವರನ್ನು ವಿವಾಹವಾಗಿರಿ. ಸ್ವೀಕಾರಾರ್ಹ ರೀತಿಯಲ್ಲಿ ಅವರ ವಧುದಕ್ಷಿಣೆಯನ್ನು ಅವರಿಗೆ ಕೊಟ್ಟುಬಿಡಿ. ಅವರು ಪರಿಶುದ್ಧೆಯರಾಗಿರಲಿ; ಅನೈತಿಕ ಸಂಬಂಧವಿರುವವರೋ ಅಥವಾ ರಹಸ್ಯ ಪ್ರೇಮಿಗಳನ್ನು ಹೊಂದಿದವರೋ ಆಗಿರಬಾರದು. ಅವರು ವಿವಾಹಿತೆಯರಾದ ಬಳಿಕ ವೇಶ್ಯಾವೃತ್ತಿ ಮಾಡಿದರೆ, ಸ್ವತಂತ್ರ ಮಹಿಳೆಯರಿಗೆ ನೀಡಲಾಗುವ ಶಿಕ್ಷೆಯ ಅರ್ಧ ಭಾಗವನ್ನು ಅವರಿಗೆ ನೀಡಲಾಗುವುದು. ಇದು (ಗುಲಾಮಸ್ತ್ರೀಯರ ವಿವಾಹ) ನಿಮ್ಮಲ್ಲಿ ಪಾಪವನ್ನು ಭಯಪಡುವವರಿಗೆ ನೀಡಲಾದ ಅನುಮತಿಯಾಗಿದೆ. ನೀವು ತಾಳ್ಮೆಯಿಂದಿದ್ದರೆ ಅದು ನಿಮಗೆ ಒಳಿತಾಗಿದೆ. ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

وَمَن لَّمۡ يَسۡتَطِعۡ مِنكُمۡ طَوۡلًا أَن يَنكِحَ
ٱلۡمُحۡصَنَٰتِ ٱلۡمُؤۡمِنَٰتِ فَمِن مَّا مَلَكَتۡ
أَيۡمَٰنُكُم مِّن فَتَيَٰتِكُمُ ٱلۡمُؤۡمِنَٰتِۚ وَٱللَّهُ
أَعۡلَمُ بِإِيمَٰنِكُمۚ بَعۡضُكُم مِّنۢ بَعۡضٖۚ
فَٱنكِحُوهُنَّ بِإِذۡنِ أَهۡلِهِنَّ وَءَاتُوهُنَّ أُجُورَهُنَّ
بِٱلۡمَعۡرُوفِ مُحۡصَنَٰتٍ غَيۡرَ مُسَٰفِحَٰتٖ وَلَا
مُتَّخِذَٰتِ أَخۡدَانٖۚ فَإِذَآ أُحۡصِنَّ فَإِنۡ أَتَيۡنَ
بِفَٰحِشَةٖ فَعَلَيۡهِنَّ نِصۡفُ مَا عَلَى ٱلۡمُحۡصَنَٰتِ
مِنَ ٱلۡعَذَابِۚ ذَٰلِكَ لِمَنۡ خَشِيَ ٱلۡعَنَتَ
مِنكُمۡۚ وَأَن تَصۡبِرُواْ خَيۡرٞ لَّكُمۡۗ وَٱللَّهُ غَفُورٞ
رَّحِيمٞ ٢٥

---

26. ಅಲ್ಲಾಹು ನಿಮಗೆ (ವಿಷಯಗಳನ್ನು) ಸ್ಪಷ್ಟಗೊಳಿಸಲು, ನಿಮ್ಮ (ನೀತಿವಂತ) ಪೂರ್ವಜರ ಚರ್ಯೆಗಳನ್ನು ತೋರಿಸಿಕೊಡಲು ಮತ್ತು ನಿಮ್ಮ ಪಶ್ಚಾತ್ತಾಪವನ್ನು ಸ್ವೀಕರಿಸಲು ಬಯಸುತ್ತಾನೆ. ಅಲ್ಲಾಹು ಎಲ್ಲವನ್ನೂ ತಿಳಿದವನು ಮತ್ತು ವಿವೇಕಪೂರ್ಣನಾಗಿದ್ದಾನೆ.

يُرِيدُ ٱللَّهُ لِيُبَيِّنَ لَكُمۡ وَيَهۡدِيَكُمۡ سُنَنَ ٱلَّذِينَ
مِن قَبۡلِكُمۡ وَيَتُوبَ عَلَيۡكُمۡۗ وَٱللَّهُ عَلِيمٌ
حَكِيمٞ ٢٦

---

27. ಅಲ್ಲಾಹು ನಿಮ್ಮ ಪಶ್ಚಾತ್ತಾಪವನ್ನು ಸ್ವೀಕರಿಸಲು ಬಯಸುತ್ತಾನೆ. ಆದರೆ ಸ್ವೇಚ್ಛೆಗಳನ್ನು ಹಿಂಬಾಲಿಸುವವರು ನೀವು ಅತಿದೊಡ್ಡ ದುರ್ಮಾರ್ಗದಲ್ಲಿ ತಪ್ಪಿಹೋಗಬೇಕೆಂದು ಬಯಸುತ್ತಾರೆ.

وَٱللَّهُ يُرِيدُ أَن يَتُوبَ عَلَيۡكُمۡ وَيُرِيدُ ٱلَّذِينَ
يَتَّبِعُونَ ٱلشَّهَوَٰتِ أَن تَمِيلُواْ مَيۡلًا عَظِيمٗا ٢٧

---

28. ಅಲ್ಲಾಹು ನಿಮಗೆ ರಿಯಾಯಿತಿ ನೀಡಲು ಬಯಸುತ್ತಾನೆ. (ಏಕೆಂದರೆ) ಮನುಷ್ಯನನ್ನು ದುರ್ಬಲನಾಗಿ ಸೃಷ್ಟಿಸಲಾಗಿದೆ.

يُرِيدُ ٱللَّهُ أَن يُخَفِّفَ عَنكُمۡۚ وَخُلِقَ ٱلۡإِنسَٰنُ
ضَعِيفٗا ٢٨

---

29. ಓ ಸತ್ಯವಿಶ್ವಾಸಿಗಳೇ! ನೀವು ಒಬ್ಬರು ಇನ್ನೊಬ್ಬರ ಧನವನ್ನು ಅನ್ಯಾಯವಾಗಿ ತಿನ್ನಬೇಡಿ. ಪರಸ್ಪರ ಸಂತೃಪ್ತಿಯಿಂದ ನಡೆಸುವ

يَٰٓأَيُّهَا ٱلَّذِينَ ءَامَنُواْ لَا تَأۡكُلُوٓاْ أَمۡوَٰلَكُم
بَيۡنَكُم بِٱلۡبَٰطِلِ إِلَّآ أَن تَكُونَ تِجَٰرَةً عَن

تَرَاضٖ مِّنكُمۡۚ وَلَا تَقۡتُلُوٓاْ أَنفُسَكُمۡۚ إِنَّ ٱللَّهَ
كَانَ بِكُمۡ رَحِيمٗا ٢٩

ವ್ಯವಹಾರದ ಹೊರತು. ನೀವು ನಿಮ್ಮನ್ನೇ ಕೊಲ್ಲಬೇಡಿ.[1] ನಿಶ್ಚಯವಾಗಿಯೂ ಅಲ್ಲಾಹು ನಿಮ್ಮೊಡನೆ ಅತ್ಯಂತ ದಯೆಯುಳ್ಳವನಾಗಿದ್ದಾನೆ.

---

وَمَن يَفۡعَلۡ ذَٰلِكَ عُدۡوَٰنٗا وَظُلۡمٗا فَسَوۡفَ
نُصۡلِيهِ نَارٗاۚ وَكَانَ ذَٰلِكَ عَلَى ٱللَّهِ يَسِيرًا ٣٠

30. ಯಾರು ಅತಿರೇಕ ಮತ್ತು ಅನ್ಯಾಯದಿಂದ ಅದನ್ನು ಮಾಡುತ್ತಾನೋ—ಅವನನ್ನು ನಾವು ನರಕಾಗ್ನಿಯಲ್ಲಿ ಹಾಕಿ ಉರಿಸುವೆವು. ಅದು ಅಲ್ಲಾಹನಿಗೆ ಅತಿ ಸುಲಭವಾಗಿದೆ.

---

إِن تَجۡتَنِبُواْ كَبَآئِرَ مَا تُنۡهَوۡنَ عَنۡهُ نُكَفِّرۡ
عَنكُمۡ سَيِّـَٔاتِكُمۡ وَنُدۡخِلۡكُم مُّدۡخَلٗا
كَرِيمٗا ٣١

31. ನಿಮಗೆ ವಿರೋಧಿಸಲಾದ ಮಹಾಪಾಪಗಳಿಂದ ನೀವು ದೂರವಾದರೆ, ನಿಮ್ಮ ಸಣ್ಣ-ಪುಟ್ಟ ತಪ್ಪುಗಳನ್ನು ನಾವು ಅಳಿಸುತ್ತೇವೆ; ಮತ್ತು ಗೌರವಾನ್ವಿತ ಸ್ಥಾನಕ್ಕೆ ನಿಮ್ಮನ್ನು ಪ್ರವೇಶ ಮಾಡಿಸುತ್ತೇವೆ.

---

وَلَا تَتَمَنَّوۡاْ مَا فَضَّلَ ٱللَّهُ بِهِۦ بَعۡضَكُمۡ
عَلَىٰ بَعۡضٖۚ لِّلرِّجَالِ نَصِيبٞ مِّمَّا ٱكۡتَسَبُواْۖ
وَلِلنِّسَآءِ نَصِيبٞ مِّمَّا ٱكۡتَسَبۡنَۚ وَسۡـَٔلُواْ ٱللَّهَ
مِن فَضۡلِهِۦٓۚ إِنَّ ٱللَّهَ كَانَ بِكُلِّ شَيۡءٍ عَلِيمٗا ٣٢

32. ಅಲ್ಲಾಹು ನಿಮ್ಮಲ್ಲಿ ಕೆಲವರಿಗೆ ಇತರರಿಗಿಂತ ಹೆಚ್ಚು ಔದಾರ್ಯ ತೋರಿದ್ದನ್ನು ನೀವು ಆಸೆಪಡಬೇಡಿ. ಪುರುಷರಿಗೆ ಅವರು ಸಂಪಾದಿಸಿದ ಪಾಲಿದೆ ಮತ್ತು ಮಹಿಳೆಯರಿಗೆ ಅವರು ಸಂಪಾದಿಸಿದ ಪಾಲಿದೆ. ಅಲ್ಲಾಹನ ಔದಾರ್ಯದಿಂದ ಅವನಲ್ಲಿ ಬೇಡಿಕೊಳ್ಳಿರಿ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ವಿಷಯಗಳನ್ನು ತಿಳಿದವನಾಗಿದ್ದಾನೆ.

---

وَلِكُلّٖ جَعَلۡنَا مَوَٰلِيَ مِمَّا تَرَكَ ٱلۡوَٰلِدَانِ
وَٱلۡأَقۡرَبُونَۚ وَٱلَّذِينَ عَقَدَتۡ أَيۡمَٰنُكُمۡ فَـَٔاتُوهُمۡ
نَصِيبَهُمۡۚ إِنَّ ٱللَّهَ كَانَ عَلَىٰ كُلِّ شَيۡءٖ شَهِيدًا ٣٣

33. ಮಾತಾಪಿತರು ಮತ್ತು ನಿಕಟ ಸಂಬಂಧಿಕರು ಬಿಟ್ಟು ಹೋದ ಆಸ್ತಿಯಲ್ಲಿ ನಾವು ಪ್ರತಿಯೊಬ್ಬರನ್ನೂ ಹಕ್ಕು-ದಾರರನ್ನಾಗಿ ಮಾಡಿದ್ದೇವೆ. ನಿಮ್ಮ ಬಲಗೈಗಳ ಮೂಲಕ ಕರಾರು ಮಾಡಿದವರಿಗೆ ಅವರ ಪಾಲನ್ನು ಕೊಟ್ಟುಬಿಡಿ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ವಿಷಯಗಳಿಗೂ ಸಾಕ್ಷಿಯಾಗಿದ್ದಾನೆ.

---

ٱلرِّجَالُ قَوَّٰمُونَ عَلَى ٱلنِّسَآءِ بِمَا فَضَّلَ ٱللَّهُ
بَعۡضَهُمۡ عَلَىٰ بَعۡضٖ وَبِمَآ أَنفَقُواْ مِنۡ أَمۡوَٰلِهِمۡۚ
فَٱلصَّٰلِحَٰتُ قَٰنِتَٰتٌ حَٰفِظَٰتٞ لِّلۡغَيۡبِ بِمَا
حَفِظَ ٱللَّهُۚ وَٱلَّٰتِي تَخَافُونَ نُشُوزَهُنَّ فَعِظُوهُنَّ
وَٱهۡجُرُوهُنَّ فِي ٱلۡمَضَاجِعِ وَٱضۡرِبُوهُنَّۖ
فَإِنۡ أَطَعۡنَكُمۡ فَلَا تَبۡغُواْ عَلَيۡهِنَّ سَبِيلًاۗ

34. ಪುರುಷರಿಗೆ ಮಹಿಳೆಯರ ಮೇಲೆ ಅಧಿಕಾರವಿದೆ. ಅದೇಕೆಂದರೆ, ಅಲ್ಲಾಹು ನಿಮ್ಮಲ್ಲಿ ಕೆಲವರನ್ನು ಇತರ ಕೆಲವರಿಗಿಂತ ಶ್ರೇಷ್ಠ-ಗೊಳಿಸಿದ್ದಾನೆ ಮತ್ತು ಅವರು (ಪುರುಷರು) ತಮ್ಮ ಧನದಿಂದ ಖರ್ಚು ಮಾಡುತ್ತಾರೆ. ವಿಧೇಯತೆ ತೋರುವವರು ಮತ್ತು ಗಂಡಂದಿರ ಅನುಪಸ್ಥಿತಿಯಲ್ಲಿ ಅಲ್ಲಾಹು ಕಾಪಾಡಬೇಕೆಂದು ಹೇಳಿದ್ದನ್ನು ಕಾಪಾಡುವವರು ಯಾರೋ ಅವರೇ ನೀತಿವಂತ ಮಹಿಳೆಯರು. ಅವರು ವಿಧೇಯತೆ ತೋರುವುದಿಲ್ಲವೆಂದು

---

[1] ಮುಸ್ಲಿಂ ಸಮುದಾಯವು ಒಂದು ದೇಹದಂತೆ. ಅದರ ಒಬ್ಬ ಸದಸ್ಯನನ್ನು ಕೊಲ್ಲುವುದು ಸಮುದಾಯವನ್ನು ಕೊಲೆ ಮಾಡುವುದಕ್ಕೆ ಸಮಾನ. ನೀವೇ ನಿಮ್ಮನ್ನು ಕೊಲ್ಲಬೇಡಿ ಎಂದು ಹೇಳಿರುವುದು ಈ ಅರ್ಥದಲ್ಲಾಗಿರಬಹುದು. ಇಲ್ಲಿ ಹೇಳಿರುವುದು ಆತ್ಮಹತ್ಯೆ ಮಾಡಿಕೊಳ್ಳುವುದರ ಬಗ್ಗೆ ಎಂದು ಕೆಲವರು ಹೇಳಿದ್ದಾರೆ.

ನಿಮಗೆ ಭಯವಾದರೆ, ಅವರಿಗೆ ಹಿತೋಪದೇಶ ಮಾಡಿ, ಹಾಸಿಗೆಯಿಂದ ದೂರವಿಡಿ ಮತ್ತು ಥಳಿಸಿ. ಅವರು ನಿಮ್ಮ ಮಾತನ್ನು ಕೇಳಿದರೆ, ಅವರ ವಿರುದ್ಧ ಬೇರೆ ಮಾರ್ಗವನ್ನು ಹುಡುಕಬೇಡಿ. ನಿಶ್ಚಯವಾಗಿಯೂ ಅಲ್ಲಾಹು ಅತ್ಯುನ್ನತನು ಮತ್ತು ಸರ್ವಶ್ರೇಷ್ಠನಾಗಿದ್ದಾನೆ.

إِنَّ ٱللَّهَ كَانَ عَلِيًّا كَبِيرًا ﴿٣٤﴾

---

35. ಅವರಿಬ್ಬರ (ಗಂಡ-ಹೆಂಡತಿಯ) ನಡುವೆ ಒಡಕು ಮೂಡಬಹುದೆಂದು ನೀವು ಭಯಪಟ್ಟರೆ, ಅವನ ಕಡೆಯಿಂದ ಒಬ್ಬ ತೀರ್ಪುಗಾರನನ್ನು ಮತ್ತು ಅವಳ ಕಡೆಯಿಂದ ಒಬ್ಬ ತೀರ್ಪುಗಾರನನ್ನು ಕಳುಹಿಸಿರಿ. ಅವರಿಬ್ಬರು ರಾಜಿ ಮಾಡಿಕೊಳ್ಳಲು ಬಯಸುವುದಾದರೆ ಅಲ್ಲಾಹು ಅವರ ನಡುವೆ ಹೊಂದಾಣಿಕೆ ಮಾಡುವನು. ನಿಶ್ಚಯವಾಗಿಯೂ ಅಲ್ಲಾಹು ಎಲ್ಲವನ್ನೂ ತಿಳಿದವನು ಮತ್ತು ಸೂಕ್ಷ್ಮಜ್ಞಾನವುಳ್ಳವನಾಗಿದ್ದಾನೆ.

وَإِنْ خِفْتُمْ شِقَاقَ بَيْنِهِمَا فَٱبْعَثُوا۟ حَكَمًا مِّنْ أَهْلِهِۦ وَحَكَمًا مِّنْ أَهْلِهَآ إِن يُرِيدَآ إِصْلَٰحًا يُوَفِّقِ ٱللَّهُ بَيْنَهُمَآ ۗ إِنَّ ٱللَّهَ كَانَ عَلِيمًا خَبِيرًا ﴿٣٥﴾

---

36. ನೀವು ಅಲ್ಲಾಹನನ್ನು ಆರಾಧಿಸಿರಿ ಮತ್ತು ಅವನೊಂದಿಗೆ ಏನನ್ನೂ ಸಹಭಾಗಿಯನ್ನಾಗಿ ಮಾಡಬೇಡಿ. ಮಾತಾಪಿತರಿಗೆ ಒಳಿತು ಮಾಡಿರಿ. ಸಂಬಂಧಿಕರು, ಅನಾಥರು, ಬಡವರು, ಕುಟುಂಬ ಸಂಬಂಧವಿರುವ ನೆರೆಹೊರೆಯವರು, ಇತರ ನೆರೆಹೊರೆಯವರು, ಸಂಗಡಿಗರು, ಪ್ರಯಾಣಿಕರು ಮತ್ತು ನಿಮ್ಮ ಅಧೀನದಲ್ಲಿರುವ ಗುಲಾಮರು ಮುಂತಾದವರೊಡನೆ ಉತ್ತಮವಾಗಿ ವರ್ತಿಸಿರಿ. ಅಹಂಕಾರ ಮತ್ತು ದರ್ಪವಿರುವ ಯಾರನ್ನೂ ಅಲ್ಲಾಹು ಇಷ್ಟಪಡುವುದಿಲ್ಲ.

وَٱعْبُدُوا۟ ٱللَّهَ وَلَا تُشْرِكُوا۟ بِهِۦ شَيْـًٔا ۖ وَبِٱلْوَٰلِدَيْنِ إِحْسَٰنًا وَبِذِى ٱلْقُرْبَىٰ وَٱلْيَتَٰمَىٰ وَٱلْمَسَٰكِينِ وَٱلْجَارِ ذِى ٱلْقُرْبَىٰ وَٱلْجَارِ ٱلْجُنُبِ وَٱلصَّاحِبِ بِٱلْجَنۢبِ وَٱبْنِ ٱلسَّبِيلِ وَمَا مَلَكَتْ أَيْمَٰنُكُمْ ۗ إِنَّ ٱللَّهَ لَا يُحِبُّ مَن كَانَ مُخْتَالًا فَخُورًا ﴿٣٦﴾

---

37. ಜಿಪುಣರು, ಜನರನ್ನು ಜಿಪುಣರಾಗಲು ಪ್ರೋತ್ಸಾಹಿಸುವವರು ಮತ್ತು ಅಲ್ಲಾಹು ಉದಾರವಾಗಿ ನೀಡಿದ ಧನವನ್ನು ಬಚ್ಚಿಡುವವರು ಯಾರೋ—ಆ ಸತ್ಯನಿಷೇಧಿಗಳಿಗೆ ನಾವು ಅಪಮಾನಕರ ಶಿಕ್ಷೆಯನ್ನು ಸಿದ್ಧಗೊಳಿಸಿದ್ದೇವೆ.

ٱلَّذِينَ يَبْخَلُونَ وَيَأْمُرُونَ ٱلنَّاسَ بِٱلْبُخْلِ وَيَكْتُمُونَ مَآ ءَاتَىٰهُمُ ٱللَّهُ مِن فَضْلِهِۦ ۗ وَأَعْتَدْنَا لِلْكَٰفِرِينَ عَذَابًا مُّهِينًا ﴿٣٧﴾

---

38. ತೋರಿಕೆಗಾಗಿ ತಮ್ಮ ಹಣವನ್ನು ಖರ್ಚು ಮಾಡುವವರು ಮತ್ತು ಅಲ್ಲಾಹನಲ್ಲಿ ಅಥವಾ ಅಂತ್ಯದಿನದಲ್ಲಿ ವಿಶ್ವಾಸವಿಡದವರು. ಯಾರು ಶೈತಾನನನ್ನು ಸಂಗಡಿಗನಾಗಿ ಸ್ವೀಕರಿಸುತ್ತಾನೋ, ಆ ಸಂಗಡಿಗನು ಎಷ್ಟು ಕೆಟ್ಟವನು!

وَٱلَّذِينَ يُنفِقُونَ أَمْوَٰلَهُمْ رِئَآءَ ٱلنَّاسِ وَلَا يُؤْمِنُونَ بِٱللَّهِ وَلَا بِٱلْيَوْمِ ٱلْءَاخِرِ ۗ وَمَن يَكُنِ ٱلشَّيْطَٰنُ لَهُۥ قَرِينًا فَسَآءَ قَرِينًا ﴿٣٨﴾

---

39. ಅಲ್ಲಾಹನಲ್ಲಿ ಮತ್ತು ಅಂತ್ಯದಿನದಲ್ಲಿ ವಿಶ್ವಾಸವಿಟ್ಟರೆ ಮತ್ತು ಅಲ್ಲಾಹು ನೀಡಿದ ಧನದಿಂದ ಖರ್ಚು ಮಾಡಿದರೆ ಅವರಿಗೇನು ತೊಂದರೆ? ಅಲ್ಲಾಹು ಅವರನ್ನು ಬಹಳ ಚೆನ್ನಾಗಿ ತಿಳಿದಿದ್ದಾನೆ.

وَمَاذَا عَلَيْهِمْ لَوْ ءَامَنُوا۟ بِٱللَّهِ وَٱلْيَوْمِ ٱلْءَاخِرِ وَأَنفَقُوا۟ مِمَّا رَزَقَهُمُ ٱللَّهُ ۚ وَكَانَ ٱللَّهُ بِهِمْ عَلِيمًا ﴿٣٩﴾

40. ನಿಶ್ಚಯವಾಗಿಯೂ ಅಲ್ಲಾಹು ಒಂದು ಅಣುವಿನ ತೂಕದಷ್ಟು ಕೂಡ ಅನ್ಯಾಯ ಮಾಡುವುದಿಲ್ಲ. ಒಳಿತೇನಾದರೂ ಇದ್ದರೆ ಅವನು ಅದನ್ನು ದ್ವಿಗುಣಗೊಳಿಸಿ ತನ್ನ ಕಡೆಯ ಮಹಾ ಪ್ರತಿಫಲವನ್ನು ದಯಪಾಲಿಸುವನು.

إِنَّ ٱللَّهَ لَا يَظۡلِمُ مِثۡقَالَ ذَرَّةٖۖ وَإِن تَكُ حَسَنَةٗ يُضَٰعِفۡهَا وَيُؤۡتِ مِن لَّدُنۡهُ أَجۡرًا عَظِيمٗا ﴿٤٠﴾

41. ನಾವು ಪ್ರತಿಯೊಂದು ಸಮುದಾಯದಿಂದಲೂ ಒಬ್ಬ ಸಾಕ್ಷಿಯನ್ನು ತರುವಾಗ ಮತ್ತು ಇವರ ಮೇಲೆ ಸಾಕ್ಷಿಯಾಗಿ ನಿಮ್ಮನ್ನು ತರುವಾಗ ಪರಿಸ್ಥಿತಿ ಹೇಗಿರಬಹುದು!

فَكَيۡفَ إِذَا جِئۡنَا مِن كُلِّ أُمَّةِۭ بِشَهِيدٖ وَجِئۡنَا بِكَ عَلَىٰ هَٰٓؤُلَآءِ شَهِيدٗا ﴿٤١﴾

42. ಅಂದು ಸತ್ಯನಿಷೇಧಿಗಳು ಮತ್ತು ಸಂದೇಶವಾಹಕರಿಗೆ ಅವಿಧೇಯತೆ ತೋರಿದವರು ಭೂಮಿಯನ್ನು ತಮ್ಮೊಂದಿಗೆ ಸಮತಟ್ಟು ಮಾಡಲಾದರೆ ಎಷ್ಟು ಚೆನ್ನಾಗಿತ್ತು ಎಂದು ಹಾರೈಸುವರು. ಅಲ್ಲಾಹನಿಂದ ಯಾವುದೇ ಸಂಗತಿಯನ್ನು ಮುಚ್ಚಿಡಲು ಅವರಿಗೆ ಸಾಧ್ಯವಿಲ್ಲ.

يَوۡمَئِذٖ يَوَدُّ ٱلَّذِينَ كَفَرُواْ وَعَصَوُاْ ٱلرَّسُولَ لَوۡ تُسَوَّىٰ بِهِمُ ٱلۡأَرۡضُ وَلَا يَكۡتُمُونَ ٱللَّهَ حَدِيثٗا ﴿٤٢﴾

43. ಓ ಸತ್ಯವಿಶ್ವಾಸಿಗಳೇ! ಪಾನಮತ್ತರಾದ ಸ್ಥಿತಿಯಲ್ಲಿ ನೀವು ನಮಾಝ್ ಮಾಡಲು ಬರಬೇಡಿ—ನೀವೇನು ಹೇಳುತ್ತಿದ್ದೀರಿ ಎಂದು ನಿಮಗೆ ಅರ್ಥವಾಗುವ ತನಕ. ದೊಡ್ಡ ಅಶುದ್ಧಿಯಿರು-ವಾಗಲೂ[1] ಬರಬೇಡಿ—ಸ್ನಾನ ಮಾಡಿ ಶುದ್ಧರಾಗುವ ತನಕ. ಆದರೆ (ಮಸೀದಿಯ ಮೂಲಕ) ಹಾದು ಹೋಗುವುದರಲ್ಲಿ ತೊಂದರೆಯಿಲ್ಲ. ನೀವು ಅನಾರೋಗ್ಯದಲ್ಲಿದ್ದರೆ ಅಥವಾ ಪ್ರಯಾ-ಣದಲ್ಲಿದ್ದರೆ; ಅಥವಾ ನಿಮ್ಮಲ್ಲೊಬ್ಬನು ಮಲಮೂತ್ರ ವಿಸರ್ಜನೆ ಮಾಡಿ ಬಂದಿದ್ದರೆ, ಅಥವಾ ಮಹಿಳೆಯರನ್ನು ಸ್ಪರ್ಶಿಸಿದ್ದರೆ (ಲೈಂಗಿಕ ಸಂಪರ್ಕ ಮಾಡಿದ್ದರೆ); ನಂತರ ನಿಮಗೆ ಶುದ್ಧಿಯಾಗಲು ನೀರು ದೊರೆಯದಿದ್ದರೆ, ಶುದ್ಧ ಮಣ್ಣಿನಿಂದ ತಯಮ್ಮುಮ್[2] ಮಾಡಿ ಮುಖ ಮತ್ತು ಕೈಗಳನ್ನು ಸವರಿರಿ. ನಿಶ್ಚಯವಾಗಿಯೂ ಅಲ್ಲಾಹು ಮನ್ನಿಸುವವನು ಮತ್ತು ಕ್ಷಮಿಸುವವನಾಗಿದ್ದಾನೆ.

يَٰٓأَيُّهَا ٱلَّذِينَ ءَامَنُواْ لَا تَقۡرَبُواْ ٱلصَّلَوٰةَ وَأَنتُمۡ سُكَٰرَىٰ حَتَّىٰ تَعۡلَمُواْ مَا تَقُولُونَ وَلَا جُنُبًا إِلَّا عَابِرِي سَبِيلٍ حَتَّىٰ تَغۡتَسِلُواْۚ وَإِن كُنتُم مَّرۡضَىٰٓ أَوۡ عَلَىٰ سَفَرٍ أَوۡ جَآءَ أَحَدٞ مِّنكُم مِّنَ ٱلۡغَآئِطِ أَوۡ لَٰمَسۡتُمُ ٱلنِّسَآءَ فَلَمۡ تَجِدُواْ مَآءٗ فَتَيَمَّمُواْ صَعِيدٗا طَيِّبٗا فَٱمۡسَحُواْ بِوُجُوهِكُمۡ وَأَيۡدِيكُمۡۗ إِنَّ ٱللَّهَ كَانَ عَفُوًّا غَفُورًا ﴿٤٣﴾

44. ಗ್ರಂಥದಿಂದ ಒಂದು ಪಾಲು ನೀಡಲಾದವರನ್ನು ನೀವು ನೋಡಿಲ್ಲವೇ? ಅವರು ದುರ್ಮಾರ್ಗವನ್ನು ಖರೀದಿಸುತ್ತಾರೆ ಮತ್ತು ನೀವು ನೇರಮಾರ್ಗದಿಂದ ತಪ್ಪಿಹೋಗಬೇಕೆಂದು ಬಯಸುತ್ತಾರೆ.

أَلَمۡ تَرَ إِلَى ٱلَّذِينَ أُوتُواْ نَصِيبٗا مِّنَ ٱلۡكِتَٰبِ يَشۡتَرُونَ ٱلضَّلَٰلَةَ وَيُرِيدُونَ أَن تَضِلُّواْ ٱلسَّبِيلَ ﴿٤٤﴾

---

[1] ದೊಡ್ಡ ಅಶುದ್ಧಿ (ಜನಾಬತ್) ಎಂದರೆ ಲೈಂಗಿಕ ಸಂಭೋಗ, ಸ್ವಪ್ನಸ್ಖಲನ ಅಥವಾ ವೀರ್ಯಸ್ಖಲನದ ಮೂಲಕ ಉಂಟಾಗುವ ಅಶುದ್ಧಿ.

[2] ವುದೂ (ಅಂಗಸ್ನಾನ) ಅಥವಾ ಸ್ನಾನ ಮಾಡಲು ನೀರು ಸಿಗದಿದ್ದರೆ, ಅಥವಾ ಕಾಯಿಲೆ ಮುಂತಾದ ಕಾರಣದಿಂದ ನೀರು ಬಳಸಲು ಸಾಧ್ಯ-ವಾಗದಿದ್ದರೆ ತಯಮ್ಮುಮ್ ಮಾಡಬಹುದು. ಇದು ವುದೂಗೆ ಪರ್ಯಾಯವಾಗಿದೆ. ತಯಮ್ಮುಮ್ ಎಂದರೆ ಎರಡು ಅಂಗೈಗಳನ್ನು ಶುದ್ಧ ಮಣ್ಣಿಗೆ ಬಡಿದು ಅದರಿಂದ ಅಂಗೈಗಳನ್ನು ಮತ್ತು ಮುಖವನ್ನು ಸವರುವುದು.

45. ನಿಮ್ಮ ಶತ್ರುಗಳನ್ನು ಅಲ್ಲಾಹು ಬಹಳ ಚೆನ್ನಾಗಿ ತಿಳಿದಿದ್ದಾನೆ. ನಿಮಗೆ ರಕ್ಷಕನಾಗಿ ಅಲ್ಲಾಹು ಸಾಕು. ಸಹಾಯ ಮಾಡುವವನಾಗಿಯೂ ಅಲ್ಲಾಹು ಸಾಕು.

وَٱللَّهُ أَعۡلَمُ بِأَعۡدَآئِكُمۡۚ وَكَفَىٰ بِٱللَّهِ وَلِيّٗا وَكَفَىٰ بِٱللَّهِ نَصِيرٗا ﴿٤٥﴾

46. ಯಹೂದಿಗಳಲ್ಲಿ ಕೆಲವರಿದ್ದಾರೆ. ಅವರು ವಚನಗಳನ್ನು ಅದರ ಸ್ಥಾನದಿಂದ ವಿರೂಪಗೊಳಿಸುತ್ತಾರೆ. ಅವರು ಹೇಳುತ್ತಾರೆ: "ನಾವು ಕಿವಿಗೊಡುತ್ತೇವೆ ಮತ್ತು ಅವಿಧೇಯತೆ ತೋರುತ್ತೇವೆ." "ಕೇಳು, ಆದರೆ ನಿನ್ನ ಮಾತು ಕೇಳದಂತಾಗಲಿ." "ನಮ್ಮ ಕಡೆಗೆ ಗಮನಕೊಡು." (ಹೀಗೆ ಹೇಳುವಾಗ) ಅವರು ತಮ್ಮ ನಾಲಗೆಗಳನ್ನು ತಿರುಚುತ್ತಾರೆ ಮತ್ತು ಧರ್ಮಕ್ಕೆ ಕಳಂಕ ಹಚ್ಚುತ್ತಾರೆ.[1] ನಾವು ಕಿವಿಗೊಡುತ್ತೇವೆ ಮತ್ತು ವಿಧೇಯತೆ ತೋರುತ್ತೇವೆ; ಕೇಳಿರಿ; ಮತ್ತು ನಮ್ಮನ್ನು ನೋಡಿರಿ ಎಂದು ಅವರು ಹೇಳುತ್ತಿದ್ದರೆ ಅವರಿಗೆ ಅದು ಅತ್ಯುತ್ತಮ ಮತ್ತು ನೇರವಾಗಿರುತ್ತಿತ್ತು. ಆದರೆ ಅವರ ಸತ್ಯನಿಷೇಧದಿಂದಾಗಿ ಅಲ್ಲಾಹು ಅವರನ್ನು ಶಪಿಸಿದ್ದಾನೆ. ಆದ್ದರಿಂದ ಅವರು ಸ್ವಲ್ಪ ಮಾತ್ರ ವಿಶ್ವಾಸವಿಡುತ್ತಾರೆ.

مِّنَ ٱلَّذِينَ هَادُواْ يُحَرِّفُونَ ٱلۡكَلِمَ عَن مَّوَاضِعِهِۦ وَيَقُولُونَ سَمِعۡنَا وَعَصَيۡنَا وَٱسۡمَعۡ غَيۡرَ مُسۡمَعٖ وَرَٰعِنَا لَيَّۢا بِأَلۡسِنَتِهِمۡ وَطَعۡنٗا فِي ٱلدِّينِۚ وَلَوۡ أَنَّهُمۡ قَالُواْ سَمِعۡنَا وَأَطَعۡنَا وَٱسۡمَعۡ وَٱنظُرۡنَا لَكَانَ خَيۡرٗا لَّهُمۡ وَأَقۡوَمَ وَلَٰكِن لَّعَنَهُمُ ٱللَّهُ بِكُفۡرِهِمۡ فَلَا يُؤۡمِنُونَ إِلَّا قَلِيلٗا ﴿٤٦﴾

47. ಓ ಗ್ರಂಥ ನೀಡಲಾದವರೇ! ನಾವು ಮುಖಗಳನ್ನು ಅಳಿಸಿ ಅವುಗಳನ್ನು ಹಿಂಭಾಗಕ್ಕೆ ತಿರುಗಿಸುವುದಕ್ಕೆ ಮೊದಲು; ಅಥವಾ ಸಬ್ಬತ್‌ನ ಜನರನ್ನು ಶಪಿಸಿದಂತೆ ನಿಮ್ಮನ್ನೂ ಶಪಿಸುವುದಕ್ಕೆ ಮೊದಲು, ನಿಮ್ಮ ಬಳಿಯಿರುವ ಗ್ರಂಥವನ್ನು ದೃಢೀಕರಿಸುತ್ತಾ ನಾವು ಅವತೀರ್ಣಗೊಳಿಸಿದ ಸಂದೇಶದಲ್ಲಿ ವಿಶ್ವಾಸವಿಡಿ. ಅಲ್ಲಾಹನ ಆಜ್ಞೆಯು ನೆರವೇರಿಯೇ ತೀರುತ್ತದೆ.

يَٰٓأَيُّهَا ٱلَّذِينَ أُوتُواْ ٱلۡكِتَٰبَ ءَامِنُواْ بِمَا نَزَّلۡنَا مُصَدِّقٗا لِّمَا مَعَكُم مِّن قَبۡلِ أَن نَّطۡمِسَ وُجُوهٗا فَنَرُدَّهَا عَلَىٰٓ أَدۡبَارِهَآ أَوۡ نَلۡعَنَهُمۡ كَمَا لَعَنَّآ أَصۡحَٰبَ ٱلسَّبۡتِۚ وَكَانَ أَمۡرُ ٱللَّهِ مَفۡعُولًا ﴿٤٧﴾

48. ತನ್ನೊಂದಿಗೆ ಸಹಭಾಗಿತ್ವ (ಶಿರ್ಕ್) ಮಾಡಲಾಗುವುದನ್ನು ಅಲ್ಲಾಹು ಎಂದಿಗೂ ಕ್ಷಮಿಸುವುದಿಲ್ಲ. ಅದರ ಹೊರತಾದ ಪಾಪಗಳನ್ನು ಅವನು ಇಚ್ಛಿಸುವವರಿಗೆ ಅವನು ಕ್ಷಮಿಸುತ್ತಾನೆ. ಅಲ್ಲಾಹನೊಂದಿಗೆ ಸಹಭಾಗಿತ್ವ (ಶಿರ್ಕ್) ಮಾಡುವವನು ನಿಶ್ಚಯವಾಗಿಯೂ ಗಂಭೀರ ಪಾಪವನ್ನೆಸಗಿದನು.

إِنَّ ٱللَّهَ لَا يَغۡفِرُ أَن يُشۡرَكَ بِهِۦ وَيَغۡفِرُ مَا دُونَ ذَٰلِكَ لِمَن يَشَآءُۚ وَمَن يُشۡرِكۡ بِٱللَّهِ فَقَدِ ٱفۡتَرَىٰٓ إِثۡمًا عَظِيمًا ﴿٤٨﴾

49. ತಮ್ಮನ್ನು ತಾವೇ ಪರಿಶುದ್ಧರೆಂದು ಹೇಳುವವರನ್ನು ನೀವು

أَلَمۡ تَرَ إِلَى ٱلَّذِينَ يُزَكُّونَ أَنفُسَهُمۚ بَلِ ٱللَّهُ يُزَكِّي

[1] ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಏನಾದರೂ ಆದೇಶಿಸಿದರೆ ಸತ್ಯವಿಶ್ವಾಸಿಗಳು ನಾವು ಕಿವಿಗೊಡುತ್ತೇವೆ ಮತ್ತು ವಿಧೇಯತೆ ತೋರುತ್ತೇವೆ ಎನ್ನುತ್ತಿದ್ದರು. ಆದರೆ ಯಹೂದಿಗಳು ನಾವು ಕಿವಿಗೊಡುತ್ತೇವೆ ಮತ್ತು ಅವಿಧೇಯತೆ ತೋರುತ್ತೇವೆ ಎನ್ನುತ್ತಾ ಸತ್ಯವಿಶ್ವಾಸಿಗಳನ್ನು ಲೇವಡಿ ಮಾಡುತ್ತಿದ್ದರು. ಅದೇ ರೀತಿ ಅವರು ದ್ವಂದ್ವಾರ್ಥವಿರುವ ಕೇಳು, ಆದರೆ ನಿನ್ನ ಮಾತು ಕೇಳದಂತಾಗಲಿ ಎಂಬ ಮಾತನ್ನೂ ಹೇಳುತ್ತಿದ್ದರು. ಇದಕ್ಕೆ ಹೊರತಾಗಿ ಅವರು ನಮ್ಮ ಕಡೆಗೆ ಗಮನಕೊಡು (ರಾಇನಾ) ಎಂಬ ದ್ವಂದ್ವಾರ್ಥವಿರುವ ಇನ್ನೊಂದು ವಚನವನ್ನು ಬಳಸುತ್ತಿದ್ದರು. ಇವುಗಳನ್ನು ಹೇಳುವಾಗ ಅವರು ತಮ್ಮ ನಾಲಗೆಗಳನ್ನು ತಿರುಚಿ ಎರಡು ರೀತಿಯ ಅರ್ಥ ಬರುವಂತೆ ಮಾಡುತ್ತಿದ್ದರು.

مَن يَشَآءُ وَلَا يُظۡلَمُونَ فَتِيلًا ﴿٤٩﴾

ನೋಡಿಲ್ಲವೇ? ಅಲ್ಲ; ವಾಸ್ತವವಾಗಿ ಅಲ್ಲಾಹು ಅವನು ಇಚ್ಛಿಸುವ-ವರನ್ನು ಪರಿಶುದ್ಧಗೊಳಿಸುತ್ತಾನೆ. (ಖರ್ಜೂರದ ಬೀಜದಲ್ಲಿರುವ) ನೂಲಿನಷ್ಟೂ ಕೂಡ ಯಾರಿಗೂ ಅನ್ಯಾಯವಾಗುವುದಿಲ್ಲ.

---

ٱنظُرۡ كَيۡفَ يَفۡتَرُونَ عَلَى ٱللَّهِ ٱلۡكَذِبَۖ وَكَفَىٰ بِهِۦٓ إِثۡمًا مُّبِينًا ﴿٥٠﴾

50. ಅವರು ಅಲ್ಲಾಹನ ಮೇಲೆ ಹೇಗೆ ಸುಳ್ಳು ಆರೋಪಿಸುತ್ತಾರೆಂದು ನೋಡಿರಿ. ಪ್ರತ್ಯಕ್ಷ ಪಾಪವಾಗಿ ಅವರಿಗೆ ಅದೇ ಸಾಕು.

---

أَلَمۡ تَرَ إِلَى ٱلَّذِينَ أُوتُواْ نَصِيبًا مِّنَ ٱلۡكِتَٰبِ يُؤۡمِنُونَ بِٱلۡجِبۡتِ وَٱلطَّٰغُوتِ وَيَقُولُونَ لِلَّذِينَ كَفَرُواْ هَٰٓؤُلَآءِ أَهۡدَىٰ مِنَ ٱلَّذِينَ ءَامَنُواْ سَبِيلًا ﴿٥١﴾

51. ಗ್ರಂಥದಿಂದ ಒಂದು ಪಾಲು ನೀಡಲಾದವರನ್ನು ನೀವು ನೋಡಿಲ್ಲವೇ? ಅವರು ವಿಗ್ರಹಗಳು ಮತ್ತು ಮಿಥ್ಯ ದೇವರುಗಳಲ್ಲಿ ವಿಶ್ವಾಸವಿಡುತ್ತಾರೆ ಮತ್ತು ಸತ್ಯನಿಷೇಧಿಗಳೊಡನೆ, "ಸತ್ಯವಿಶ್ವಾ-ಸಿಗಳಿಗಿಂತಲೂ ಇವರೇ ಹೆಚ್ಚು ಸನ್ಮಾರ್ಗದಲ್ಲಿದ್ದಾರೆ" ಎಂದು ಹೇಳುತ್ತಾರೆ.

---

أُوْلَٰٓئِكَ ٱلَّذِينَ لَعَنَهُمُ ٱللَّهُۖ وَمَن يَلۡعَنِ ٱللَّهُ فَلَن تَجِدَ لَهُۥ نَصِيرًا ﴿٥٢﴾

52. ಅವರೇ ಅಲ್ಲಾಹನ ಶಾಪಕ್ಕೆ ಗುರಿಯಾದವರು. ಯಾರು ಅಲ್ಲಾಹನ ಶಾಪಕ್ಕೆ ಗುರಿಯಾಗುತ್ತಾರೋ ಅವರಿಗೆ ಯಾವುದೇ ಸಹಾಯಕನನ್ನು ನೀವು ಕಾಣಲಾರಿರಿ.

---

أَمۡ لَهُمۡ نَصِيبٌ مِّنَ ٱلۡمُلۡكِ فَإِذًا لَّا يُؤۡتُونَ ٱلنَّاسَ نَقِيرًا ﴿٥٣﴾

53. ಆಧಿಪತ್ಯದಲ್ಲಿ ಅವರಿಗೇನಾದರೂ ಪಾಲಿದೆಯೇ? ಇದ್ದರೆ ಅವರು ಜನರಿಗೆ ಖರ್ಜೂರ ಬೀಜದ ಪೊರೆಯನ್ನೂ ನೀಡುತ್ತಿರಲಿಲ್ಲ.

---

أَمۡ يَحۡسُدُونَ ٱلنَّاسَ عَلَىٰ مَآ ءَاتَىٰهُمُ ٱللَّهُ مِن فَضۡلِهِۦۖ فَقَدۡ ءَاتَيۡنَآ ءَالَ إِبۡرَٰهِيمَ ٱلۡكِتَٰبَ وَٱلۡحِكۡمَةَ وَءَاتَيۡنَٰهُم مُّلۡكًا عَظِيمًا ﴿٥٤﴾

54. ಜನರಿಗೆ ಅಲ್ಲಾಹು ತನ್ನ ಔದಾರ್ಯದಿಂದ ನೀಡಿದ್ದನ್ನು ಕಂಡು ಅವರಿಗೆ ಹೊಟ್ಟೆ ಉರಿಯುತ್ತಿದೆಯೇ? ಹಾಗಾದರೆ, ನಾವು ಇಬ್ರಾಹೀಮರ ಕುಟುಂಬಕ್ಕೆ ಗ್ರಂಥ ಮತ್ತು ವಿವೇಕವನ್ನು ನೀಡಿದ್ದೇವೆ. ಅವರಿಗೆ ನಾವು ಮಹಾ ಸಾಮ್ರಾಜ್ಯವನ್ನು ಕೂಡ ನೀಡಿದ್ದೇವೆ.

---

فَمِنۡهُم مَّنۡ ءَامَنَ بِهِۦ وَمِنۡهُم مَّن صَدَّ عَنۡهُۚ وَكَفَىٰ بِجَهَنَّمَ سَعِيرًا ﴿٥٥﴾

55. ಅವರಲ್ಲಿ ಕೆಲವರು ಅದರಲ್ಲಿ (ಗ್ರಂಥದಲ್ಲಿ) ವಿಶ್ವಾಸವಿಡುತ್ತಾರೆ ಮತ್ತು ಅವರಲ್ಲಿ ಕೆಲವರು ಅದನ್ನು ದ್ವೇಷಿಸುತ್ತಾರೆ. ಅವರಿಗೆ ಧಗಧಗಿಸುವ ನರಕಾಗ್ನಿಯೇ ಸಾಕು.

---

إِنَّ ٱلَّذِينَ كَفَرُواْ بِـَٔايَٰتِنَا سَوۡفَ نُصۡلِيهِمۡ نَارًا كُلَّمَا نَضِجَتۡ جُلُودُهُم بَدَّلۡنَٰهُمۡ جُلُودًا غَيۡرَهَا لِيَذُوقُواْ ٱلۡعَذَابَۗ إِنَّ ٱللَّهَ كَانَ عَزِيزًا حَكِيمًا ﴿٥٦﴾

56. ನಿಶ್ಚಯವಾಗಿಯೂ ನಮ್ಮ ವಚನಗಳನ್ನು ನಿಷೇಧಿಸಿದವರು ಯಾರೋ—ಅವರನ್ನು ನಾವು ನರಕಾಗ್ನಿಯಲ್ಲಿ ಹಾಕಿ ಉರಿಸುವೆವು. ಅವರ ಚರ್ಮಗಳು ಬೆಂದು ಕರಟುವಾಗಲೆಲ್ಲಾ, ಅವರು ಶಿಕ್ಷೆಯನ್ನು ಅನುಭವಿಸುತ್ತಲೇ ಇರಲು, ನಾವು ಅವರಿಗೆ ಬೇರೆ ಚರ್ಮಗಳನ್ನು ಬದಲಿಯಾಗಿ ನೀಡುವೆವು. ನಿಶ್ಚಯವಾಗಿಯೂ ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

57. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ—
ಅವರನ್ನು ನಾವು ಸದ್ಯವೇ ತಳಭಾಗದಿಂದ ನದಿಗಳು ಹರಿಯುವ
ಸ್ವರ್ಗೋದ್ಯಾನಗಳಿಗೆ ಪ್ರವೇಶ ಮಾಡಿಸುವೆವು. ಅವರು
ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅಲ್ಲಿ ಅವರಿಗೆ ಪರಿಶುದ್ಧ
ಸಂಗಾತಿಗಳಿರುವರು. ನಾವು ಅವರನ್ನು ಶಾಶ್ವತ ನೆರಳಿಗೆ ಪ್ರವೇಶ
ಮಾಡಿಸುವೆವು.

وَٱلَّذِينَ ءَامَنُواْ وَعَمِلُواْ ٱلصَّٰلِحَٰتِ سَنُدۡخِلُهُمۡ
جَنَّٰتٖ تَجۡرِي مِن تَحۡتِهَا ٱلۡأَنۡهَٰرُ خَٰلِدِينَ فِيهَآ
أَبَدٗاۖ لَّهُمۡ فِيهَآ أَزۡوَٰجٞ مُّطَهَّرَةٞۖ وَنُدۡخِلُهُمۡ ظِلّٗا
ظَلِيلًا ٥٧

58. ನಂಬಿಕೆಯಿಂದ ನೀಡಲಾದ ವಸ್ತುಗಳನ್ನು ಅವುಗಳ
ಹಕ್ಕುದಾರರಿಗೆ ಕೊಟ್ಟುಬಿಡಲು ಮತ್ತು ಜನರ ನಡುವೆ ತೀರ್ಪು
ನೀಡುವಾಗ ನ್ಯಾಯವಾಗಿಯೇ ತೀರ್ಪು ನೀಡಲು ಅಲ್ಲಾಹು
ನಿಮಗೆ ಆಜ್ಞಾಪಿಸುತ್ತಾನೆ. ನಿಶ್ಚಯವಾಗಿಯೂ ಅಲ್ಲಾಹು
ನಿಮಗೆ ನೀಡುವ ಉಪದೇಶವು ಬಹಳ ಉತ್ತಮವಾಗಿದೆ!
ನಿಶ್ಚಯವಾಗಿಯೂ ಅಲ್ಲಾಹು ಎಲ್ಲವನ್ನೂ ಕೇಳುವವನು ಮತ್ತು
ನೋಡುವವನಾಗಿದ್ದಾನೆ.

إِنَّ ٱللَّهَ يَأۡمُرُكُمۡ أَن تُؤَدُّواْ ٱلۡأَمَٰنَٰتِ إِلَىٰٓ أَهۡلِهَا
وَإِذَا حَكَمۡتُم بَيۡنَ ٱلنَّاسِ أَن تَحۡكُمُواْ بِٱلۡعَدۡلِۚ
إِنَّ ٱللَّهَ نِعِمَّا يَعِظُكُم بِهِۦٓۗ إِنَّ ٱللَّهَ كَانَ
سَمِيعَۢا بَصِيرٗا ٥٨

59. ಓ ಸತ್ಯವಿಶ್ವಾಸಿಗಳೇ! ನೀವು ಅಲ್ಲಾಹನನ್ನು ಅನುಸರಿಸಿರಿ ಮತ್ತು
ಸಂದೇಶವಾಹಕರನ್ನು ಅನುಸರಿಸಿರಿ. ನಿಮ್ಮ ಮೇಲೆ ಅಧಿಕಾ-
ರವಿರುವವರನ್ನೂ ಅನುಸರಿಸಿರಿ. ನಿಮ್ಮ ಮಧ್ಯೆ ಯಾವುದೇ
ವಿಷಯದಲ್ಲಿ ಭಿನ್ನಮತವುಂಟಾದರೆ ಅದನ್ನು ಅಲ್ಲಾಹನಿಗೆ ಮತ್ತು
ಸಂದೇಶವಾಹಕರಿಗೆ ಮರಳಿಸಿರಿ—ನೀವು ಅಲ್ಲಾಹನಲ್ಲಿ ಮತ್ತು
ಅಂತ್ಯದಿನದಲ್ಲಿ ವಿಶ್ವಾಸವಿಡುವವರಾಗಿದ್ದರೆ. ಅದು ಅತ್ಯುತ್ತಮ
ಮಾರ್ಗವಾಗಿದ್ದು ಅತ್ಯುತ್ತಮ ಪರಿಣಾಮವನ್ನು ಹೊಂದಿದೆ.

يَٰٓأَيُّهَا ٱلَّذِينَ ءَامَنُوٓاْ أَطِيعُواْ ٱللَّهَ وَأَطِيعُواْ
ٱلرَّسُولَ وَأُوْلِي ٱلۡأَمۡرِ مِنكُمۡۖ فَإِن تَنَٰزَعۡتُمۡ
فِي شَيۡءٖ فَرُدُّوهُ إِلَى ٱللَّهِ وَٱلرَّسُولِ إِن كُنتُمۡ
تُؤۡمِنُونَ بِٱللَّهِ وَٱلۡيَوۡمِ ٱلۡأٓخِرِۚ ذَٰلِكَ خَيۡرٞ
وَأَحۡسَنُ تَأۡوِيلًا ٥٩

60. ನಿಮಗೆ ಅವತೀರ್ಣವಾದ ಗ್ರಂಥದಲ್ಲಿ ಮತ್ತು ನಿಮಗಿಂತ
ಮುಂಚೆ ಅವತೀರ್ಣವಾದ ಗ್ರಂಥಗಳಲ್ಲಿ ನಾವು ವಿಶ್ವಾಸವಿಟ್ಟಿ-
ದ್ದೇವೆ ಎಂದು ವಾದಿಸುವವರನ್ನು ನೀವು ನೋಡಿಲ್ಲವೇ? ಅವರು
ತೀರ್ಪಿಗಾಗಿ ಮಿಥ್ಯ ದೇವರುಗಳ ಬಳಿಗೆ ಹೋಗಲು ಬಯಸುತ್ತಾರೆ.
ವಾಸ್ತವವಾಗಿ, ಮಿಥ್ಯ ದೇವರುಗಳನ್ನು ನಿಷೇಧಿಸಬೇಕೆಂದು
ಅವರಿಗೆ ಆಜ್ಞಾಪಿಸಲಾಗಿತ್ತು. ಶೈತಾನನು ಅವರನ್ನು ವಿದೂರ
ದುರ್ಮಾರ್ಗದಲ್ಲಿ ಬಿಟ್ಟುಬಿಡಲು ಬಯಸುತ್ತಾನೆ.

أَلَمۡ تَرَ إِلَى ٱلَّذِينَ يَزۡعُمُونَ أَنَّهُمۡ ءَامَنُواْ بِمَآ
أُنزِلَ إِلَيۡكَ وَمَآ أُنزِلَ مِن قَبۡلِكَ يُرِيدُونَ
أَن يَتَحَاكَمُوٓاْ إِلَى ٱلطَّٰغُوتِ وَقَدۡ أُمِرُوٓاْ أَن
يَكۡفُرُواْ بِهِۦۖ وَيُرِيدُ ٱلشَّيۡطَٰنُ أَن يُضِلَّهُمۡ
ضَلَٰلَۢا بَعِيدٗا ٦٠

61. “ಅಲ್ಲಾಹು ಅವತೀರ್ಣಗೊಳಿಸಿದ ಗ್ರಂಥಕ್ಕೆ ಮತ್ತು ಅವನ
ಸಂದೇಶವಾಹಕರ ಕಡೆಗೆ ಬನ್ನಿರಿ” ಎಂದು ಅವರೊಡನೆ
ಹೇಳಲಾದರೆ, ಆ ಕಪಟವಿಶ್ವಾಸಿಗಳು ದ್ವೇಷದಿಂದ ನಿಮ್ಮನ್ನು
ಅವಗಣಿಸಿ ನಡೆಯುವುದನ್ನು ನೀವು ಕಾಣುವಿರಿ.

وَإِذَا قِيلَ لَهُمۡ تَعَالَوۡاْ إِلَىٰ مَآ أَنزَلَ ٱللَّهُ وَإِلَى
ٱلرَّسُولِ رَأَيۡتَ ٱلۡمُنَٰفِقِينَ يَصُدُّونَ عَنكَ
صُدُودٗا ٦١

62. ಅವರ ಕೈಗಳು ಈಗಾಗಲೇ ಮಾಡಿಟ್ಟ ದುಷ್ಕರ್ಮಗಳ

فَكَيۡفَ إِذَآ أَصَٰبَتۡهُم مُّصِيبَةُۢ بِمَا قَدَّمَتۡ

ಕಾರಣದಿಂದ ಅವರಿಗೇನಾದರೂ ಅನಾಹುತ ಸಂಭವಿಸಿದರೆ, ನಂತರ ಅವರು ತಮ್ಮ ಬಳಿಗೆ ಬಂದು ಅಲ್ಲಾಹನ ಮೇಲೆ ಆಣೆ ಮಾಡುತ್ತಾ, "ನಾವು ಒಳಿತು ಮತ್ತು ಹೊಂದಾಣಿಕೆಯನ್ನು ಮಾತ್ರ ಬಯಸಿದ್ದೆವು" ಎಂದು ಹೇಳುವಾಗ ಅವರ ಸ್ಥಿತಿ ಹೇಗಿರಬಹುದು?

أَيۡدِيهِمۡ ثُمَّ جَآءُوكَ يَحۡلِفُونَ بِٱللَّهِ إِنۡ أَرَدۡنَآ إِلَّآ إِحۡسَٰنٗا وَتَوۡفِيقًا ٦٢

63. ಅವರ ಹೃದಯಗಳಲ್ಲಿ ಏನಿದೆಯೆಂದು ಅಲ್ಲಾಹು ತಿಳಿದಿದ್ದಾನೆ. ಆದ್ದರಿಂದ ಅವರನ್ನು ಬಿಟ್ಟು ದೂರ ಸರಿಯಿರಿ; ಅವರಿಗೆ ಉಪದೇಶ ಮಾಡಿರಿ ಮತ್ತು ಅವರಿಗೆ ಹೃದಯಸ್ಪರ್ಶಿ ಮಾತನ್ನು ಹೇಳಿರಿ.

أُوْلَٰٓئِكَ ٱلَّذِينَ يَعۡلَمُ ٱللَّهُ مَا فِي قُلُوبِهِمۡ فَأَعۡرِضۡ عَنۡهُمۡ وَعِظۡهُمۡ وَقُل لَّهُمۡ فِيٓ أَنفُسِهِمۡ قَوۡلَۢا بَلِيغٗا ٦٣

64. ಅಲ್ಲಾಹನ ಅಪ್ಪಣೆಯಿಂದ ಅನುಸರಿಸುವುದಕ್ಕಾಗಿಯೇ ಹೊರತು ನಾವು ಯಾವುದೇ ಸಂದೇಶವಾಹಕರನ್ನು ಕಳುಹಿಸಿಲ್ಲ. ಅವರು ಸ್ವಯಂ ಅವರ ಮೇಲೆಯೇ ಅಕ್ರಮವೆಸಗಿ, ನಂತರ ನಿಮ್ಮ ಬಳಿಗೆ ಬಂದು ಅಲ್ಲಾಹನಲ್ಲಿ ಕ್ಷಮೆಯಾಚಿಸಿದರೆ, ಮತ್ತು ಅವರ ಪರವಾಗಿ ಸಂದೇಶವಾಹಕರು ಕೂಡ ಕ್ಷಮೆಯಾಚಿಸಿದರೆ, ಅವರು ಅಲ್ಲಾಹನನ್ನು ಪಶ್ಚಾತ್ತಾಪ ಸ್ವೀಕರಿಸುವವನಾಗಿ ಮತ್ತು ದಯೆ ತೋರುವವನಾಗಿ ಕಾಣುವರು.

وَمَآ أَرۡسَلۡنَا مِن رَّسُولٍ إِلَّا لِيُطَاعَ بِإِذۡنِ ٱللَّهِۚ وَلَوۡ أَنَّهُمۡ إِذ ظَّلَمُوٓاْ أَنفُسَهُمۡ جَآءُوكَ فَٱسۡتَغۡفَرُواْ ٱللَّهَ وَٱسۡتَغۡفَرَ لَهُمُ ٱلرَّسُولُ لَوَجَدُواْ ٱللَّهَ تَوَّابٗا رَّحِيمٗا ٦٤

65. ಇಲ್ಲ, ನಿಮ್ಮ ಪರಿಪಾಲಕನ (ಅಲ್ಲಾಹನ) ಮೇಲಾಣೆ! ಅವರು ತಮ್ಮ ನಡುವಿನ ಭಿನ್ನಮತಗಳಿಗೆ ನಿಮ್ಮನ್ನು ತೀರ್ಪುಗಾರನನ್ನಾಗಿ ಮಾಡಿ, ನಂತರ ನೀವು ನೀಡುವ ತೀರ್ಪನ್ನು ಯಾವುದೇ ಜಂಜಾಟವಿಲ್ಲದೆ ಸ್ವೀಕರಿಸಿ ಸಂಪೂರ್ಣ ವಿಧೇಯರಾಗುವ ತನಕ ಅವರು ಸತ್ಯವಿಶ್ವಾಸಿಗಳಾಗುವುದಿಲ್ಲ.

فَلَا وَرَبِّكَ لَا يُؤۡمِنُونَ حَتَّىٰ يُحَكِّمُوكَ فِيمَا شَجَرَ بَيۡنَهُمۡ ثُمَّ لَا يَجِدُواْ فِيٓ أَنفُسِهِمۡ حَرَجٗا مِّمَّا قَضَيۡتَ وَيُسَلِّمُواْ تَسۡلِيمٗا ٦٥

66. "ನೀವು ನಿಮ್ಮನ್ನೇ ಕೊಲ್ಲಿರಿ" ಅಥವಾ "ನೀವು ನಿಮ್ಮ ಮನೆಗಳನ್ನು ಬಿಟ್ಟು ಹೊರಡಿರಿ" ಎಂಬ ಆಜ್ಞೆಯನ್ನು ನಾವು ಅವರಿಗೆ ಕಡ್ಡಾಯಗೊಳಿಸುತ್ತಿದ್ದರೆ, ಅವರಲ್ಲಿ ಕೆಲವರ ಹೊರತು ಯಾರೂ ಅದನ್ನು ಮಾಡುತ್ತಿರಲಿಲ್ಲ. ಅವರಿಗೆ ನೀಡಲಾಗುವ ಉಪದೇಶದಂತೆ ಅವರು ನಡೆಯುತ್ತಿದ್ದರೆ, ಅದು ಅವರಿಗೆ ಶ್ರೇಷ್ಠವಾಗಿರುತ್ತಿತ್ತು ಮತ್ತು ಅವರಿಗೆ ಪ್ರಬಲ ದೃಢತೆಯಾಗಿ ಮಾರ್ಪಡುತ್ತಿತ್ತು.

وَلَوۡ أَنَّا كَتَبۡنَا عَلَيۡهِمۡ أَنِ ٱقۡتُلُوٓاْ أَنفُسَكُمۡ أَوِ ٱخۡرُجُواْ مِن دِيَٰرِكُم مَّا فَعَلُوهُ إِلَّا قَلِيلٞ مِّنۡهُمۡۖ وَلَوۡ أَنَّهُمۡ فَعَلُواْ مَا يُوعَظُونَ بِهِۦ لَكَانَ خَيۡرٗا لَّهُمۡ وَأَشَدَّ تَثۡبِيتٗا ٦٦

67. ಹಾಗಿದ್ದರೆ ನಾವು ಅವರಿಗೆ ನಮ್ಮ ಕಡೆಯ ಮಹಾ ಪ್ರತಿಫಲವನ್ನು ದಯಪಾಲಿಸುತ್ತಿದ್ದೆವು.

وَإِذٗا لَّأٓتَيۡنَٰهُم مِّن لَّدُنَّآ أَجۡرًا عَظِيمٗا ٦٧

68. ಅವರನ್ನು ನೇರ ಮಾರ್ಗಕ್ಕೆ ಮುನ್ನಡೆಸುತ್ತಿದ್ದೆವು.

وَلَهَدَيۡنَٰهُمۡ صِرَٰطٗا مُّسۡتَقِيمٗا ٦٨

69. ಯಾರು ಅಲ್ಲಾಹನನ್ನು ಮತ್ತು ಸಂದೇಶವಾಹಕರನ್ನು ಅನುಸರಿಸುತ್ತಾನೋ—ಅವರು ಅಲ್ಲಾಹು ಅನುಗ್ರಹಿಸಿದ

وَمَن يُطِعِ ٱللَّهَ وَٱلرَّسُولَ فَأُوْلَٰٓئِكَ مَعَ ٱلَّذِينَ أَنۡعَمَ ٱللَّهُ عَلَيۡهِم مِّنَ ٱلنَّبِيِّـۧنَ وَٱلصِّدِّيقِينَ

ಪ್ರವಾದಿಗಳು, ಸತ್ಯವಂತರು, ಹುತಾತ್ಮರು ಮತ್ತು ನೀತಿವಂತರೊಡನೆ ಸೇರುವರು. ಅವರು ಬಹಳ ಉತ್ತಮ ಸಂಗಡಿಗರು!

وَٱلشُّهَدَآءِ وَٱلصَّٰلِحِينَۚ وَحَسُنَ أُوْلَٰٓئِكَ
رَفِيقٗا ٦٩

---

70. ಅದು ಅಲ್ಲಾಹನ ಕಡೆಯ ಔದಾರ್ಯವಾಗಿದೆ. ಎಲ್ಲವನ್ನೂ ತಿಳಿದವನಾಗಿ ಅಲ್ಲಾಹು ಸಾಕು.

ذَٰلِكَ ٱلۡفَضۡلُ مِنَ ٱللَّهِۚ وَكَفَىٰ بِٱللَّهِ عَلِيمٗا ٧٠

---

71. ಓ ಸತ್ಯವಿಶ್ವಾಸಿಗಳೇ! ನೀವು ಜಾಗರೂಕರಾಗಿರಿ ಮತ್ತು ಸಣ್ಣ ಗುಂಪುಗಳಾಗಿ ಅಥವಾ ಎಲ್ಲರೂ ಒಟ್ಟಾಗಿ ಯುದ್ಧಕ್ಕೆ ಹೊರಡಿರಿ.

يَٰٓأَيُّهَا ٱلَّذِينَ ءَامَنُواْ خُذُواْ حِذۡرَكُمۡ فَٱنفِرُواْ
ثُبَاتٍ أَوِ ٱنفِرُواْ جَمِيعٗا ٧١

---

72. ನಿಶ್ಚಯವಾಗಿಯೂ ನಿಮ್ಮಲ್ಲಿ ಹಿಂದೆ ಬೀಳುವ ಕೆಲವರಿದ್ದಾರೆ. ನಿಮಗೇನಾದರೂ ಅನಾಹುತ ಸಂಭವಿಸಿದರೆ, “ನಾನು ಅವರೊಂದಿಗೆ ಯುದ್ಧಕ್ಕೆ ಹೋಗದಂತೆ ಮಾಡುವ ಮೂಲಕ ಅಲ್ಲಾಹು ನನ್ನನ್ನು ಅನುಗ್ರಹಿಸಿದ್ದಾನೆ” ಎಂದು ಅವರು ಹೇಳುತ್ತಾರೆ.

وَإِنَّ مِنكُمۡ لَمَن لَّيُبَطِّئَنَّ فَإِنۡ أَصَٰبَتۡكُم
مُّصِيبَةٞ قَالَ قَدۡ أَنۡعَمَ ٱللَّهُ عَلَيَّ إِذۡ لَمۡ أَكُن
مَّعَهُمۡ شَهِيدٗا ٧٢

---

73. ನಿಮಗೆ ಅಲ್ಲಾಹನ ಕಡೆಯಿಂದ ಏನಾದರೂ ಔದಾರ್ಯ ದೊರೆತರೆ, ನಿಮ್ಮ ಮತ್ತು ಅವರ ನಡುವೆ ಯಾವುದೇ ಅನ್ಯೋ-ನ್ಯತೆಯಿಲ್ಲದ ಶೈಲಿಯಲ್ಲಿ, “ಅಯ್ಯೋ! ನಾನು ಅವರ ಜೊತೆಗೆ ತೆರಳುತ್ತಿದ್ದರೆ ಎಷ್ಟು ಚೆನ್ನಾಗಿತ್ತು! ನನಗೂ ಮಹಾ ಗೆಲುವನ್ನು ಸಂಪಾದಿಸಬಹುದಿತ್ತು” ಎನ್ನುತ್ತಾರೆ.

وَلَئِنۡ أَصَٰبَكُمۡ فَضۡلٞ مِّنَ ٱللَّهِ لَيَقُولَنَّ كَأَن
لَّمۡ تَكُنۢ بَيۡنَكُمۡ وَبَيۡنَهُۥ مَوَدَّةٞ يَٰلَيۡتَنِي كُنتُ
مَعَهُمۡ فَأَفُوزَ فَوۡزًا عَظِيمٗا ٧٣

---

74. ಪರಲೋಕಕ್ಕಾಗಿ ಇಹಲೋಕವನ್ನು ತ್ಯಾಗ ಮಾಡಲು ಸಿದ್ಧರಾಗಿ-ರುವವರು ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡಲಿ. ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡಿ ಕೊಲೆಯಾಗುವವರು ಅಥವಾ ಜಯಶಾಲಿಯಾಗುವವರು ಯಾರೋ—ಅವರಿಗೆ ನಾವು ಮಹಾ ಪ್ರತಿಫಲವನ್ನು ನೀಡುತ್ತೇವೆ.

فَلۡيُقَٰتِلۡ فِي سَبِيلِ ٱللَّهِ ٱلَّذِينَ يَشۡرُونَ
ٱلۡحَيَوٰةَ ٱلدُّنۡيَا بِٱلۡأٓخِرَةِۚ وَمَن يُقَٰتِلۡ فِي سَبِيلِ
ٱللَّهِ فَيُقۡتَلۡ أَوۡ يَغۡلِبۡ فَسَوۡفَ نُؤۡتِيهِ أَجۡرًا
عَظِيمٗا ٧٤

---

75. ನಿಮಗೇನಾಗಿದೆ? ದಬ್ಬಾಳಿಕೆಯಿಂದ ನರಳುತ್ತಿರುವ ಪುರುಷರು, ಮಹಿಳೆಯರು ಮತ್ತು ಮಕ್ಕಳಿಗಾಗಿ ನೀವೇಕೆ ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡುವುದಿಲ್ಲ? “ಓ ನಮ್ಮ ಪರಿಪಾಲಕನೇ! ದಬ್ಬಾಳಿಕೆ ನಡೆಸುವ ಜನರು ವಾಸಿಸುತ್ತಿರುವ ಈ ಊರಿನಿಂದ ನಮ್ಮನ್ನು ವಿಮೋಚನೆಗೊಳಿಸು; ನಮಗೆ ನಿನ್ನ ಕಡೆಯ ಒಬ್ಬ ರಕ್ಷಕನನ್ನು ಮತ್ತು ನಿನ್ನ ಕಡೆಯ ಒಬ್ಬ ಸಹಾಯಕನನ್ನು ನಿಯೋಗಿಸು” ಎಂದು ಅವರು ಪ್ರಾರ್ಥಿಸುತ್ತಿದ್ದಾರೆ.

وَمَا لَكُمۡ لَا تُقَٰتِلُونَ فِي سَبِيلِ ٱللَّهِ
وَٱلۡمُسۡتَضۡعَفِينَ مِنَ ٱلرِّجَالِ وَٱلنِّسَآءِ وَٱلۡوِلۡدَٰنِ
ٱلَّذِينَ يَقُولُونَ رَبَّنَآ أَخۡرِجۡنَا مِنۡ هَٰذِهِ ٱلۡقَرۡيَةِ
ٱلظَّالِمِ أَهۡلُهَا وَٱجۡعَل لَّنَا مِن لَّدُنكَ وَلِيّٗا
وَٱجۡعَل لَّنَا مِن لَّدُنكَ نَصِيرًا ٧٥

---

76. ಸತ್ಯವಿಶ್ವಾಸಿಗಳು ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡುತ್ತಾರೆ. ಸತ್ಯನಿಷೇಧಿಗಳು ಮಿಥ್ಯ ದೇವರುಗಳ ಮಾರ್ಗದಲ್ಲಿ ಯುದ್ಧ

ٱلَّذِينَ ءَامَنُواْ يُقَٰتِلُونَ فِي سَبِيلِ ٱللَّهِۖ وَٱلَّذِينَ
كَفَرُواْ يُقَٰتِلُونَ فِي سَبِيلِ ٱلطَّٰغُوتِ فَقَٰتِلُوٓاْ

ಮಾಡುತ್ತಾರೆ. ಆದ್ದರಿಂದ ಶೈತಾನನ ಮಿತ್ರರ ವಿರುದ್ಧ ಯುದ್ಧ ಮಾಡಿರಿ. ನಿಶ್ಚಯವಾಗಿಯೂ ಶೈತಾನನ ತಂತ್ರವು ಬಲಹೀನವಾಗಿದೆ.

أَوْلِيَآءَ ٱلشَّيْطَٰنِ ۖ إِنَّ كَيْدَ ٱلشَّيْطَٰنِ كَانَ
ضَعِيفًا ٧٦

---

77. “ನಿಮ್ಮ ಕೈಗಳನ್ನು ತಡೆಹಿಡಿಯಿರಿ, ನಮಾಝ್ ಸಂಸ್ಥಾಪಿಸಿರಿ ಮತ್ತು ಝಕಾತ್ ನೀಡಿರಿ” ಎಂದು ಆದೇಶಿಸಲಾದ ಜನರನ್ನು ನೀವು ನೋಡಿಲ್ಲವೇ? ಅವರಿಗೆ ಯುದ್ಧವನ್ನು ಕಡ್ಡಾಯಗೊಳಿಸಲಾದಾಗ ಅವರಲ್ಲೊಂದು ಗುಂಪು ಅಲ್ಲಾಹನನ್ನು ಭಯಪಡುವಂತೆ ಅಥವಾ ಅದಕ್ಕಿಂತಲೂ ತೀವ್ರವಾಗಿ ಜನರನ್ನು ಭಯಪಡುತ್ತಾರೆ! ಅವರು ಕೇಳುತ್ತಾರೆ: “ಓ ನಮ್ಮ ಪರಿಪಾಲಕನೇ! ನಮಗೆ ಯುದ್ಧವನ್ನು (ಈಗಲೇ) ಏಕೆ ಕಡ್ಡಾಯಗೊಳಿಸಿದೆ? ಹತ್ತಿರದ ಒಂದು ಅವಧಿಯ ತನಕ ನಮಗೆ ಕಾಲಾವಕಾಶ ನೀಡಬಹುದಿತ್ತಲ್ಲವೇ?” ಹೇಳಿರಿ: “ಇಹಲೋಕದ ಆನಂದವು ಅತ್ಯಲ್ಪವಾಗಿದೆ. ದೇವಭಯವುಳ್ಳವರಿಗೆ ಪರಲೋಕವು ಅತ್ಯುತ್ತಮವಾಗಿದೆ. ನಿಮಗೆ (ಖರ್ಜೂರದ ಬೀಜದಲ್ಲಿರುವ) ನೂಲಿನಷ್ಟೂ ಅನ್ಯಾಯವಾಗುವುದಿಲ್ಲ.”

أَلَمْ تَرَ إِلَى ٱلَّذِينَ قِيلَ لَهُمْ كُفُّوٓا۟ أَيْدِيَكُمْ
وَأَقِيمُوا۟ ٱلصَّلَوٰةَ وَءَاتُوا۟ ٱلزَّكَوٰةَ فَلَمَّا كُتِبَ
عَلَيْهِمُ ٱلْقِتَالُ إِذَا فَرِيقٌ مِّنْهُمْ يَخْشَوْنَ ٱلنَّاسَ
كَخَشْيَةِ ٱللَّهِ أَوْ أَشَدَّ خَشْيَةً ۚ وَقَالُوا۟ رَبَّنَا لِمَ
كَتَبْتَ عَلَيْنَا ٱلْقِتَالَ لَوْلَآ أَخَّرْتَنَآ إِلَىٰٓ أَجَلٍ
قَرِيبٍ ۗ قُلْ مَتَٰعُ ٱلدُّنْيَا قَلِيلٌ وَٱلْءَاخِرَةُ خَيْرٌ
لِّمَنِ ٱتَّقَىٰ وَلَا تُظْلَمُونَ فَتِيلًا ٧٧

---

78. ನೀವೆಲ್ಲೇ ಇದ್ದರೂ ಸಾವು ನಿಮ್ಮನ್ನು ಬೆನ್ನಟ್ಟುತ್ತದೆ. ನೀವು ಸುಭದ್ರ ಕೋಟೆಯೊಳಗಿದ್ದರೂ ಸಹ. ಅವರಿಗೆ ಒಳಿತುಂಟಾದರೆ, “ಇದು ಅಲ್ಲಾಹನಿಂದ” ಎಂದು ಅವರು ಹೇಳುತ್ತಾರೆ. ಆದರೆ ಅವರಿಗೆ ಕೆಡುಕುಂಟಾದರೆ, “ಇದು ನಿಮ್ಮಿಂದ” ಎನ್ನುತ್ತಾರೆ. ಹೇಳಿರಿ: “ಎಲ್ಲವೂ ಅಲ್ಲಾಹನಿಂದಲೇ ಆಗಿದೆ.” ಈ ಜನರಿಗೇನಾಗಿದೆ? ಇವರೇಕೆ ಮಾತನ್ನು ಅರ್ಥಮಾಡಿಕೊಳ್ಳುವುದಿಲ್ಲ?

أَيْنَمَا تَكُونُوا۟ يُدْرِككُّمُ ٱلْمَوْتُ وَلَوْ كُنتُمْ
فِى بُرُوجٍ مُّشَيَّدَةٍ ۗ وَإِن تُصِبْهُمْ حَسَنَةٌ يَقُولُوا۟
هَٰذِهِۦ مِنْ عِندِ ٱللَّهِ ۖ وَإِن تُصِبْهُمْ سَيِّئَةٌ يَقُولُوا۟
هَٰذِهِۦ مِنْ عِندِكَ ۚ قُلْ كُلٌّ مِّنْ عِندِ ٱللَّهِ ۖ فَمَالِ
هَٰٓؤُلَآءِ ٱلْقَوْمِ لَا يَكَادُونَ يَفْقَهُونَ حَدِيثًا ٧٨

---

79. ನಿಮಗೇನಾದರೂ ಒಳಿತುಂಟಾದರೆ ಅದು ಅಲ್ಲಾಹನಿಂದ. ನಿಮಗೆ ಕೆಡುಕು ಬಾಧಿಸಿದರೆ, ಅದು ನಿಮ್ಮಿಂದಲೇ ಆಗಿದೆ. ನಾವು ನಿಮ್ಮನ್ನು ಮನುಷ್ಯರಿಗೆ ಸಂದೇಶವಾಹಕನನ್ನಾಗಿ ಮಾಡಿ ಕಳುಹಿಸಿದ್ದೇವೆ. ಸಾಕ್ಷಿಯಾಗಿ ಅಲ್ಲಾಹು ಸಾಕು.

مَّآ أَصَابَكَ مِنْ حَسَنَةٍ فَمِنَ ٱللَّهِ ۖ وَمَآ أَصَابَكَ
مِن سَيِّئَةٍ فَمِن نَّفْسِكَ ۚ وَأَرْسَلْنَٰكَ لِلنَّاسِ
رَسُولًا ۚ وَكَفَىٰ بِٱللَّهِ شَهِيدًا ٧٩

---

80. ಯಾರು ಸಂದೇಶವಾಹಕರನ್ನು ಅನುಸರಿಸುತ್ತಾನೋ ಅವನು ಅಲ್ಲಾಹನನ್ನು ಅನುಸರಿಸಿದನು. ಯಾರು ವಿಮುಖರಾಗುತ್ತಾರೋ ಅವರ ಮೇಲೆ ಕಾವಲುಗಾರನಾಗಿ ನಾವು ನಿಮ್ಮನ್ನು ಕಳುಹಿಸಿಲ್ಲ.

مَّن يُطِعِ ٱلرَّسُولَ فَقَدْ أَطَاعَ ٱللَّهَ ۖ وَمَن تَوَلَّىٰ
فَمَآ أَرْسَلْنَٰكَ عَلَيْهِمْ حَفِيظًا ٨٠

---

81. ಅವರು ಹೇಳುತ್ತಾರೆ: “ನಾವು ಅನುಸರಿಸಿದ್ದೇವೆ.” ನಂತರ ಅವರು ನಿಮ್ಮ ಬಳಿಯಿಂದ ಹೊರಟರೆ, ಅವರಲ್ಲೊಂದು ಗುಂಪು ನೀವು ಹೇಳಿದ್ದಕ್ಕೆ ವಿರುದ್ಧವಾಗಿ ರಾತ್ರಿಯಲ್ಲಿ ಗೂಢ ಮಾತುಕತೆ ನಡೆಸುತ್ತಾರೆ. ಅವರು ಮಾಡುವ ಗೂಢಾಲೋಚನೆಯನ್ನು

وَيَقُولُونَ طَاعَةٌ فَإِذَا بَرَزُوا۟ مِنْ عِندِكَ بَيَّتَ
طَآئِفَةٌ مِّنْهُمْ غَيْرَ ٱلَّذِى تَقُولُ ۖ وَٱللَّهُ يَكْتُبُ
مَا يُبَيِّتُونَ ۖ فَأَعْرِضْ عَنْهُمْ وَتَوَكَّلْ عَلَى ٱللَّهِ ۚ

ಅಲ್ಲಾಹು ದಾಖಲಿಸುತ್ತಿದ್ದಾನೆ. ಆದ್ದರಿಂದ ನೀವು ಅವರಿಂದ ವಿಮುಖರಾಗಿರಿ ಮತ್ತು ಅಲ್ಲಾಹನಲ್ಲಿ ಭರವಸೆಯಿಡಿರಿ. ಭರವಸೆಯಿಡಲು ನಿಮಗೆ ಅಲ್ಲಾಹು ಸಾಕು.

وَكَفَىٰ بِٱللَّهِ وَكِيلًا ﴿٨١﴾

---

82. ಅವರು ಕುರ್‌ಆನನ್ನು ಮನನ ಮಾಡುವುದಿಲ್ಲವೇ? ಅದು ಅಲ್ಲಾಹು ಅಲ್ಲದವರ ಕಡೆಯಿಂದ (ಅವತೀರ್ಣವಾಗಿರುತ್ತಿದ್ದರೆ) ಅವರು ಅದರಲ್ಲಿ ಅನೇಕ ವಿರೋಧಾಭಾಸಗಳನ್ನು ಕಾಣುತ್ತಿದ್ದರು.

أَفَلَا يَتَدَبَّرُونَ ٱلْقُرْءَانَۚ وَلَوْ كَانَ مِنْ عِندِ غَيْرِ
ٱللَّهِ لَوَجَدُوا۟ فِيهِ ٱخْتِلَٰفًا كَثِيرًا ﴿٨٢﴾

---

83. ಅವರಿಗೆ ಶಾಂತಿ ಅಥವಾ ಭೀತಿಯ ಸುದ್ದಿಗಳು ತಲುಪಿದೊಡನೆ ಅವರು ಅದನ್ನು ಪ್ರಚಾರ ಮಾಡುತ್ತಾರೆ. ಅವರು ಅದನ್ನು ಸಂದೇಶವಾಹಕರಿಗೆ ಮತ್ತು ಅವರಲ್ಲಿ ವಿಷಯಗಳನ್ನು ಆಳವಾಗಿ ವಿಶ್ಲೇಷಿಸುವ ವಿದ್ವಾಂಸರಿಗೆ ಬಿಟ್ಟು ಬಿಡುತ್ತಿದ್ದರೆ, ಅವರು ಅದರ ಸತ್ಯಾಸತ್ಯತೆಗಳನ್ನು ತಿಳಿಯುತ್ತಿದ್ದರು. ನಿಮ್ಮ ಮೇಲೆ ಅಲ್ಲಾಹನ ಔದಾರ್ಯ ಮತ್ತು ದಯೆಯಿಲ್ಲದಿರುತ್ತಿದ್ದರೆ ನಿಮ್ಮಲ್ಲಿ ಕೆಲವರ ಹೊರತು ಎಲ್ಲರೂ ಶೈತಾನನನ್ನು ಹಿಂಬಾಲಿಸುತ್ತಿದ್ದರು.

وَإِذَا جَآءَهُمْ أَمْرٌ مِّنَ ٱلْأَمْنِ أَوِ ٱلْخَوْفِ
أَذَاعُوا۟ بِهِۦۖ وَلَوْ رَدُّوهُ إِلَى ٱلرَّسُولِ وَإِلَىٰٓ أُو۟لِى
ٱلْأَمْرِ مِنْهُمْ لَعَلِمَهُ ٱلَّذِينَ يَسْتَنۢبِطُونَهُۥ مِنْهُمْۗ
وَلَوْلَا فَضْلُ ٱللَّهِ عَلَيْكُمْ وَرَحْمَتُهُۥ لَٱتَّبَعْتُمُ
ٱلشَّيْطَٰنَ إِلَّا قَلِيلًا ﴿٨٣﴾

---

84. ಆದ್ದರಿಂದ ನೀವು ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡಿರಿ. ನಿಮಗೆ ನಿಮ್ಮ ವಿಷಯದ ಹೊಣೆಯನ್ನು ಮಾತ್ರ ಹೊರಿಸಲಾಗಿದೆ. ಸತ್ಯವಿಶ್ವಾಸಿಗಳನ್ನು ಹುರಿದುಂಬಿಸಿರಿ. ಅಲ್ಲಾಹು ಸತ್ಯನಿಷೇಧಿಗಳ ದಾಳಿಯನ್ನು ತಡೆಗಟ್ಟುವನು. ಅಲ್ಲಾಹು ಮಹಾ ಶಕ್ತಿಶಾಲಿ ಮತ್ತು ಅತಿಕಠಿಣವಾಗಿ ಶಿಕ್ಷಿಸುವವನಾಗಿದ್ದಾನೆ.

فَقَٰتِلْ فِى سَبِيلِ ٱللَّهِ لَا تُكَلَّفُ إِلَّا نَفْسَكَۚ
وَحَرِّضِ ٱلْمُؤْمِنِينَۖ عَسَى ٱللَّهُ أَن يَكُفَّ
بَأْسَ ٱلَّذِينَ كَفَرُوا۟ۚ وَٱللَّهُ أَشَدُّ بَأْسًا وَأَشَدُّ
تَنكِيلًا ﴿٨٤﴾

---

85. ಯಾರು ಒಳಿತಿನ ಕಾರ್ಯದಲ್ಲಿ ಶಿಫಾರಸು ಮಾಡುತ್ತಾನೋ, ಅದರ ಒಂದು ಪಾಲು ಅವನಿಗೂ ಇದೆ. ಯಾರು ಕೆಡುಕಿನ ಕಾರ್ಯದಲ್ಲಿ ಶಿಫಾರಸು ಮಾಡುತ್ತಾನೋ, ಅದರ ಒಂದು ಪಾಲು ಅವನಿಗೂ ಇದೆ. ಅಲ್ಲಾಹು ಎಲ್ಲ ವಿಷಯಗಳಲ್ಲೂ ಮೇಲ್ವಿಚಾರಕನಾಗಿದ್ದಾನೆ.

مَّن يَشْفَعْ شَفَٰعَةً حَسَنَةً يَكُن لَّهُۥ نَصِيبٌ
مِّنْهَاۖ وَمَن يَشْفَعْ شَفَٰعَةً سَيِّئَةً يَكُن لَّهُۥ
كِفْلٌ مِّنْهَاۗ وَكَانَ ٱللَّهُ عَلَىٰ كُلِّ شَىْءٍ مُّقِيتًا ﴿٨٥﴾

---

86. ನಿಮಗೆ ಅಭಿವಂದನೆ (ಸಲಾಂ) ಸಲ್ಲಿಸಲಾದರೆ ಅದಕ್ಕಿಂತಲೂ ಉತ್ತಮವಾಗಿ ಅಭಿವಂದನೆ ಸಲ್ಲಿಸಿರಿ. ಅಥವಾ ಕನಿಷ್ಠ ಅದನ್ನು ಮರಳಿಸಿರಿ.[1] ನಿಶ್ಚಯವಾಗಿಯೂ ಅಲ್ಲಾಹು ಪ್ರತಿಯೊಂದು ವಿಷಯವನ್ನೂ ವಿಚಾರಣೆ ಮಾಡುತ್ತಾನೆ.

وَإِذَا حُيِّيتُم بِتَحِيَّةٍ فَحَيُّوا۟ بِأَحْسَنَ مِنْهَآ أَوْ
رُدُّوهَآۗ إِنَّ ٱللَّهَ كَانَ عَلَىٰ كُلِّ شَىْءٍ حَسِيبًا ﴿٨٦﴾

---

87. ಅಲ್ಲಾಹು! ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ನಿಶ್ಚಯವಾಗಿಯೂ ಅವನು ನಿಮ್ಮೆಲ್ಲರನ್ನೂ

ٱللَّهُ لَآ إِلَٰهَ إِلَّا هُوَۚ لَيَجْمَعَنَّكُمْ
إِلَىٰ يَوْمِ ٱلْقِيَٰمَةِ لَا رَيْبَ فِيهِۗ وَمَنْ

---

[1] ಯಾರಾದರೂ “ಅಸ್ಸಲಾಂ ಅಲೈಕುಂ” ಎಂದು ಹೇಳಿದರೆ, “ವಅಲೈಕುಮುಸ್ಸಲಾಂ ವರಹ್ಮತುಲ್ಲಾಹಿ ವಬರಕಾತುಹು” ಎಂದು ಹೇಳಿ ಉತ್ತರಿಸಬೇಕು. ಇದು ಐಚ್ಛಿಕವಾಗಿದೆ. ಕನಿಷ್ಠ “ವಅಲೈಕುಮುಸ್ಸಲಾಂ” ಎಂದು ಹೇಳಿ ಉತ್ತರಿಸುವುದು ಕಡ್ಡಾಯವಾಗಿದೆ.

ಪುನರುತ್ಥಾನ ದಿನಕ್ಕೆ ಒಟ್ಟುಗೂಡಿಸುವನು. ಅದರಲ್ಲಿ ಸಂದೇಹವೇ ಇಲ್ಲ. ಮಾತಿನಲ್ಲಿ ಅಲ್ಲಾಹನಿಗಿಂತಲೂ ಹೆಚ್ಚು ಸತ್ಯವಂತನು ಯಾರು?

أَصۡدَقُ مِنَ ٱللَّهِ حَدِيثٗا ٨٧

---

88. ನಿಮಗೇನಾಗಿದೆ? ಕಪಟವಿಶ್ವಾಸಿಗಳ ವಿಷಯದಲ್ಲಿ ನೀವೇಕೆ ಎರಡು ಗುಂಪುಗಳಾಗಿದ್ದೀರಿ? ಅವರು ಮಾಡಿದ (ದುಷ್ಕರ್ಮಗಳ) ಕಾರಣದಿಂದ ಅಲ್ಲಾಹು ಅವರನ್ನು ಹಿಂದಕ್ಕೆ ತಿರುಗಿಸಿದ್ದಾನೆ. ಅಲ್ಲಾಹು ದಾರಿತಪ್ಪಿಸಿದ ಜನರಿಗೆ ನೀವು ಸನ್ಮಾರ್ಗ ತೋರಿಸಲು ಬಯಸುತ್ತೀರಾ? ಅಲ್ಲಾಹು ಯಾರನ್ನು ದಾರಿತಪ್ಪಿಸುತ್ತಾನೋ ಅವನಿಗೆ ಯಾವುದೇ ದಾರಿಯನ್ನು ನೀವು ಕಾಣಲಾರಿರಿ.

فَمَا لَكُمۡ فِي ٱلۡمُنَٰفِقِينَ فِئَتَيۡنِ وَٱللَّهُ أَرۡكَسَهُم
بِمَا كَسَبُوٓاْۚ أَتُرِيدُونَ أَن تَهۡدُواْ مَنۡ أَضَلَّ ٱللَّهُۖ
وَمَن يُضۡلِلِ ٱللَّهُ فَلَن تَجِدَ لَهُۥ سَبِيلٗا ٨٨

---

89. ಅವರು ಸತ್ಯನಿಷೇಧಿಗಳಾದಂತೆ ನೀವೂ ಸತ್ಯನಿಷೇಧಿಗಳಾಗಬೇಕು ಮತ್ತು ನೀವೆಲ್ಲರೂ ಸಮಾನರಾಗಬೇಕು ಎಂದು ಅವರು ಬಯಸುತ್ತಾರೆ. ಆದ್ದರಿಂದ ಅವರು ಅಲ್ಲಾಹನ ಮಾರ್ಗದಲ್ಲಿ ವಲಸೆ (ಹಿಜ್ರ) ಮಾಡುವ ತನಕ ಅವರಲ್ಲಿ ಯಾರನ್ನೂ ನೀವು ಮಿತ್ರರನ್ನಾಗಿ ಸ್ವೀಕರಿಸಬೇಡಿ. ಅವರು ವಿಮುಖರಾದರೆ, ಅವರನ್ನು ಹಿಡಿಯಿರಿ ಮತ್ತು ಕಂಡಲ್ಲಿ ಕೊಲ್ಲಿರಿ. ಅವರಲ್ಲಿ ಯಾರನ್ನೂ ನೀವು ಮಿತ್ರರನ್ನಾಗಿ ಅಥವಾ ಸಹಾಯಕರನ್ನಾಗಿ ಸ್ವೀಕರಿಸಬೇಡಿ.

وَدُّواْ لَوۡ تَكۡفُرُونَ كَمَا كَفَرُواْ فَتَكُونُونَ
سَوَآءٗۖ فَلَا تَتَّخِذُواْ مِنۡهُمۡ أَوۡلِيَآءَ حَتَّىٰ يُهَاجِرُواْ
فِي سَبِيلِ ٱللَّهِۚ فَإِن تَوَلَّوۡاْ فَخُذُوهُمۡ وَٱقۡتُلُوهُمۡ
حَيۡثُ وَجَدتُّمُوهُمۡۖ وَلَا تَتَّخِذُواْ مِنۡهُمۡ وَلِيّٗا وَلَا
نَصِيرًا ٨٩

---

90. ಆದರೆ ನಿಮ್ಮೊಂದಿಗೆ ಒಪ್ಪಂದ ಮಾಡಿಕೊಂಡಿರುವ ಜನರ ಬಳಿಗೆ ಹೋಗಿ ಆಶ್ರಯ ಪಡೆದವರ ಹೊರತು; ಅಥವಾ, ನಿಮ್ಮ ವಿರುದ್ಧ ಯುದ್ಧ ಮಾಡಲು ಅಥವಾ ತಮ್ಮದೇ ಜನರ ವಿರುದ್ಧ ಯುದ್ಧ ಮಾಡಲು ಹೃದಯದಲ್ಲಿ ಇಕ್ಕಟ್ಟು ಅನುಭವಿಸುತ್ತಾ ನಿಮ್ಮ ಬಳಿಗೆ ಬಂದವರ ಹೊರತು. ಅಲ್ಲಾಹು ಇಚ್ಛಿಸುತ್ತಿದ್ದರೆ ಅವನು ಅವರಿಗೆ ನಿಮ್ಮ ಮೇಲೆ ಅಧಿಕಾರ ನೀಡುತ್ತಿದ್ದನು. ಆಗ ಅವರು ನಿಮ್ಮ ವಿರುದ್ಧ ಯುದ್ಧ ಮಾಡುತ್ತಿದ್ದರು. ಆದರೆ ಅವರು ಯುದ್ಧದಿಂದ ದೂರ ಸರಿದು, ನಿಮ್ಮ ವಿರುದ್ಧ ಯುದ್ಧ ಮಾಡದಿದ್ದರೆ ಮತ್ತು ಶಾಂತಿ ಪ್ರಸ್ತಾಪವನ್ನು ಮುಂದಿಟ್ಟರೆ, ಅವರಿಗೆ ವಿರುದ್ಧವಾಗಿ ಯಾವುದೇ ಮಾರ್ಗವನ್ನು ಸ್ವೀಕರಿಸಲು ಅಲ್ಲಾಹು ನಿಮಗೆ ಅನುಮತಿ ನೀಡಿಲ್ಲ.

إِلَّا ٱلَّذِينَ يَصِلُونَ إِلَىٰ قَوۡمِۭ بَيۡنَكُمۡ وَبَيۡنَهُم
مِّيثَٰقٌ أَوۡ جَآءُوكُمۡ حَصِرَتۡ صُدُورُهُمۡ أَن
يُقَٰتِلُوكُمۡ أَوۡ يُقَٰتِلُواْ قَوۡمَهُمۡۚ وَلَوۡ شَآءَ ٱللَّهُ
لَسَلَّطَهُمۡ عَلَيۡكُمۡ فَلَقَٰتَلُوكُمۡۚ فَإِنِ ٱعۡتَزَلُوكُمۡ
فَلَمۡ يُقَٰتِلُوكُمۡ وَأَلۡقَوۡاْ إِلَيۡكُمُ ٱلسَّلَمَ فَمَا جَعَلَ
ٱللَّهُ لَكُمۡ عَلَيۡهِمۡ سَبِيلٗا ٩٠

---

91. ನೀವು ಇನ್ನೊಂದು ರೀತಿಯ ಜನರನ್ನು ಕಾಣುವಿರಿ. ಅವರು ನಿಮ್ಮಿಂದ ಮತ್ತು ತಮ್ಮದೇ ಜನರಿಂದ ಸುರಕ್ಷಿತರಾಗಿರಲು ಬಯಸುತ್ತಾರೆ. ಆದರೆ, ಅವರನ್ನು ಕ್ಷೋಭೆಗೆ (ಯುದ್ಧಕ್ಕೆ) ಮರಳಿಸಿದಾಗಲೆಲ್ಲಾ ಅವರು ಅದರಲ್ಲಿ ತಲೆಕೆಳಗಾಗಿ ಬೀಳುತ್ತಾರೆ.[1] ಅವರು

سَتَجِدُونَ ءَاخَرِينَ يُرِيدُونَ أَن يَأۡمَنُوكُمۡ
وَيَأۡمَنُواْ قَوۡمَهُمۡ كُلَّ مَا رُدُّوٓاْ إِلَى ٱلۡفِتۡنَةِ أُرۡكِسُواْ
فِيهَاۚ فَإِن لَّمۡ يَعۡتَزِلُوكُمۡ وَيُلۡقُوٓاْ إِلَيۡكُمُ ٱلسَّلَمَ

---

[1] ಇವರು ಮುಸಲ್ಮಾನರೊಡನೆ ಶಾಂತಿ ಒಪ್ಪಂದ ಮಾಡಿಕೊಂಡವರಲ್ಲ; ಮುಸಲ್ಮಾನರೊಡನೆ ಸಹಾನುಭೂತಿಯುಳ್ಳವರೂ ಅಲ್ಲ. ಬದಲಾಗಿ,

ಯುದ್ಧದಿಂದ ದೂರ ಸರಿಯದಿದ್ದರೆ ಮತ್ತು ಶಾಂತಿ ಪ್ರಸ್ತಾಪವನ್ನು ಮುಂದಿಡದಿದ್ದರೆ, ಹಾಗೂ ತಮ್ಮ ಕೈಗಳನ್ನು ತಡೆಹಿಡಿಯದಿದ್ದರೆ, ಅವರನ್ನು ಹಿಡಿಯಿರಿ ಮತ್ತು ಕಂಡಲ್ಲಿ ಕೊಲ್ಲಿರಿ. ಅವರ ವಿರುದ್ಧ ನಾವು ನಿಮಗೆ ಸ್ಪಷ್ಟ ಅಧಿಕಾರವನ್ನು ನೀಡಿದ್ದೇವೆ.

وَيَكُفُّوٓاْ أَيۡدِيَهُمۡ فَخُذُوهُمۡ وَٱقۡتُلُوهُمۡ حَيۡثُ
ثَقِفۡتُمُوهُمۡۚ وَأُوْلَٰٓئِكُمۡ جَعَلۡنَا لَكُمۡ عَلَيۡهِمۡ
سُلۡطَٰنٗا مُّبِينٗا ٩١

---

92. ಒಬ್ಬ ಸತ್ಯವಿಶ್ವಾಸಿ ಇನ್ನೊಬ್ಬ ಸತ್ಯವಿಶ್ವಾಸಿಯನ್ನು ಕೊಲ್ಲಬಾರದು. ಪ್ರಮಾದವಶಾತ್ ಸಂಭವಿಸುವುದರ ಹೊರತು. ಒಬ್ಬ ಸತ್ಯವಿ-ಶ್ವಾಸಿಯನ್ನು ಯಾರಾದರೂ ಪ್ರಮಾದವಶಾತ್ ಕೊಂದುಬಿಟ್ಟರೆ, ಅದಕ್ಕೆ ಪರಿಹಾರವಾಗಿ ಒಬ್ಬ ಸತ್ಯವಿಶ್ವಾಸಿ ಗುಲಾಮನನ್ನು ಸ್ವತಂತ್ರಗೊಳಿಸಬೇಕು ಮತ್ತು ಕೊಲೆಯಾದವನ ಕುಟುಂಬಕ್ಕೆ ರಕ್ತ ಪರಿಹಾರ ಕೊಡಬೇಕು. ಅವರು (ಕೊಲೆಯಾದವನ ಕುಟುಂಬದವರು) ಅದನ್ನು ಉದಾರವಾಗಿ ಬಿಟ್ಟುಬಿಡುವ ಹೊರತು. ಕೊಲೆಯಾದವನು ಶತ್ರು ಪಕ್ಷಕ್ಕೆ ಸೇರಿದ ಸತ್ಯವಿಶ್ವಾ-ಸಿಯಾಗಿದ್ದರೆ, ಒಬ್ಬ ಸತ್ಯವಿಶ್ವಾಸಿ ಗುಲಾಮನನ್ನು ಸ್ವತಂತ್ರಗೊಳಿ-ಸಿದರೆ ಸಾಕು. ಅವನು ನಿಮ್ಮೊಂದಿಗೆ ಒಪ್ಪಂದದಲ್ಲಿರುವ ಪಕ್ಷಕ್ಕೆ ಸೇರಿದವನಾಗಿದ್ದರೆ ಅವನ ಕುಟುಂಬದವರಿಗೆ ರಕ್ತ ಪರಿಹಾರ ಕೊಡಬೇಕು ಮತ್ತು ಒಬ್ಬ ಸತ್ಯವಿಶ್ವಾಸಿ ಗುಲಾಮನನ್ನು ಸ್ವತಂತ್ರ-ಗೊಳಿಸಬೇಕು. ಯಾರಿಗೆ ಇದು ಸಾಧ್ಯವಿಲ್ಲವೋ ಅವನು ಸತತ ಎರಡು ತಿಂಗಳು ಉಪವಾಸ ಆಚರಿಸಬೇಕು. ಇದು ಅಲ್ಲಾಹು ನಿಶ್ಚಯಿಸಿದ ಪಶ್ಚಾತ್ತಾಪವಾಗಿದೆ. ಅಲ್ಲಾಹು ಎಲ್ಲವನ್ನು ತಿಳಿದವನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَمَا كَانَ لِمُؤۡمِنٍ أَن يَقۡتُلَ مُؤۡمِنًا إِلَّا خَطَـٔٗاۚ
وَمَن قَتَلَ مُؤۡمِنًا خَطَـٔٗا فَتَحۡرِيرُ رَقَبَةٖ مُّؤۡمِنَةٖ
وَدِيَةٞ مُّسَلَّمَةٌ إِلَىٰٓ أَهۡلِهِۦٓ إِلَّآ أَن يَصَّدَّقُواْۚ فَإِن
كَانَ مِن قَوۡمٍ عَدُوّٖ لَّكُمۡ وَهُوَ مُؤۡمِنٞ فَتَحۡرِيرُ
رَقَبَةٖ مُّؤۡمِنَةٖۖ وَإِن كَانَ مِن قَوۡمِۭ بَيۡنَكُمۡ
وَبَيۡنَهُم مِّيثَٰقٞ فَدِيَةٞ مُّسَلَّمَةٌ إِلَىٰٓ أَهۡلِهِۦ وَتَحۡرِيرُ
رَقَبَةٖ مُّؤۡمِنَةٖۖ فَمَن لَّمۡ يَجِدۡ فَصِيَامُ شَهۡرَيۡنِ
مُتَتَابِعَيۡنِ تَوۡبَةٗ مِّنَ ٱللَّهِۗ وَكَانَ ٱللَّهُ عَلِيمًا
حَكِيمٗا ٩٢

---

93. ಯಾರು ಒಬ್ಬ ಸತ್ಯವಿಶ್ವಾಸಿಯನ್ನು ಉದ್ದೇಶಪೂರ್ವಕ ಕೊಲ್ಲುತ್ತಾನೋ, ಅವನಿಗೆ ನರಕಾಗ್ನಿಯೇ ಪ್ರತಿಫಲವಾಗಿದೆ. ಅವನು ಅದರಲ್ಲಿ ಶಾಶ್ವತವಾಗಿ ವಾಸಿಸುವನು. ಅವನು ಅಲ್ಲಾಹನ ಕೋಪ ಮತ್ತು ಶಾಪಕ್ಕೆ ಪಾತ್ರನಾಗುವನು. ಅಲ್ಲಾಹು ಅವನಿಗೆ ಅತಿಕಠೋರ ಶಿಕ್ಷೆಯನ್ನು ಸಿದ್ಧಗೊಳಿಸಿದ್ದಾನೆ.

وَمَن يَقۡتُلۡ مُؤۡمِنٗا مُّتَعَمِّدٗا فَجَزَآؤُهُۥ جَهَنَّمُ
خَٰلِدٗا فِيهَا وَغَضِبَ ٱللَّهُ عَلَيۡهِ وَلَعَنَهُۥ وَأَعَدَّ
لَهُۥ عَذَابًا عَظِيمٗا ٩٣

---

94. ಓ ಸತ್ಯವಿಶ್ವಾಸಿಗಳೇ! ನೀವು ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡುವಾಗ (ಶತ್ರು ಮತ್ತು ಮಿತ್ರ ಯಾರೆಂದು) ಸ್ಪಷ್ಟವಾಗಿ ಗುರುತಿಸಿರಿ. ನಿಮಗೆ ಸಲಾಮ್ ಹೇಳಿದವನೊಂದಿಗೆ ನೀನು ಸತ್ಯ-ವಿಶ್ವಾಸಿಯಲ್ಲ ಎಂದು ಹೇಳಬೇಡಿ. ನೀವು ಭೌತಿಕ ಲಾಭದ ಹುಡುಕಾಟದಲ್ಲಿದ್ದರೆ, ಅಲ್ಲಾಹನ ಬಳಿ ಯಥೇಷ್ಟ ಐಶ್ವರ್ಯವಿದೆ.

يَٰٓأَيُّهَا ٱلَّذِينَ ءَامَنُوٓاْ إِذَا ضَرَبۡتُمۡ فِي سَبِيلِ ٱللَّهِ
فَتَبَيَّنُواْ وَلَا تَقُولُواْ لِمَنۡ أَلۡقَىٰٓ إِلَيۡكُمُ ٱلسَّلَٰمَ
لَسۡتَ مُؤۡمِنٗا تَبۡتَغُونَ عَرَضَ ٱلۡحَيَوٰةِ ٱلدُّنۡيَا
فَعِندَ ٱللَّهِ مَغَانِمُ كَثِيرَةٞۚ كَذَٰلِكَ كُنتُم مِّن قَبۡلُ

---

ಯುದ್ಧದ ಸಮಯದಲ್ಲಿ ತಟಸ್ಥರಾಗಿದ್ದು ಯುದ್ಧದ ಗತಿಯನ್ನು ವೀಕ್ಷಿಸುವವರು. ಇವರಿಗೆ ಮುಸಲ್ಮಾನರ ವಿರುದ್ಧ ಯುದ್ಧ ಮಾಡುವ ಉತ್ತಮ ಅವಕಾಶ ಸಿಕ್ಕಿದರೆ ಅವರು ಯುದ್ಧ ಮಾಡಲು ಹಿಂಜರಿಯುವುದಿಲ್ಲ. ಕೆಲವು ವ್ಯಾಖ್ಯಾನಕಾರರು ಕ್ಷೋಭೆ ಎಂದರೆ ದೇವಸಹಭಾಗಿತ್ವ (ಶಿರ್ಕ್) ಎಂದು ಅರ್ಥ ನೀಡಿದ್ದಾರೆ.

ಈ ಹಿಂದೆ ನೀವೂ ಹೀಗೆಯೇ (ಸತ್ಯನಿಷೇಧದಲ್ಲಿ) ಇದ್ದಿರಿ.[1] ನಂತರ ಅಲ್ಲಾಹು ನಿಮಗೆ (ಸನ್ಮಾರ್ಗ ತೋರಿಸಿ) ಉಪಕಾರ ಮಾಡಿದನು. ಆದ್ದರಿಂದ ನೀವು ಸ್ಪಷ್ಟವಾಗಿ ಗುರುತಿಸಿರಿ. ನಿಶ್ಚಯವಾಗಿಯೂ ನೀವು ಮಾಡುವುದನ್ನು ಅಲ್ಲಾಹು ಸೂಕ್ಷ್ಮವಾಗಿ ತಿಳಿಯುತ್ತಿದ್ದಾನೆ.

فَمَنَّ ٱللَّهُ عَلَيۡكُمۡ فَتَبَيَّنُوٓاْۚ إِنَّ ٱللَّهَ كَانَ بِمَا تَعۡمَلُونَ خَبِيرٗا ٩٤

---

95. ಯಾವುದೇ ಕಾರಣವಿಲ್ಲದೆ ಕುಳಿತಿರುವ ಸತ್ಯವಿಶ್ವಾಸಿಗಳು ಮತ್ತು ಅಲ್ಲಾಹನ ಮಾರ್ಗದಲ್ಲಿ ತನು-ಧನಗಳಿಂದ ಯುದ್ಧ ಮಾಡುವ ಸತ್ಯವಿಶ್ವಾಸಿಗಳು ಸಮಾನರಲ್ಲ. ತನು-ಧನಗಳಿಂದ ಯುದ್ಧ ಮಾಡುವವರಿಗೆ ಅಲ್ಲಾಹು ಕುಳಿತವರಿಗಿಂತ ಹೆಚ್ಚು ಪದವಿಗಳನ್ನು ನೀಡಿ ಅನುಗ್ರಹಿಸುತ್ತಾನೆ. ಅಲ್ಲಾಹು (ಅವರಿಬ್ಬರಲ್ಲಿ) ಪ್ರತಿಯೊಬ್ಬರಿಗೂ ಉತ್ತಮ ಪ್ರತಿಫಲದ ವಾಗ್ದಾನ ಮಾಡಿದ್ದಾನೆ. ಆದರೆ ಯುದ್ಧ ಮಾಡುವವರಿಗೆ ಅಲ್ಲಾಹು ಕುಳಿತವರಿಗೆ ನೀಡುವುದಕ್ಕಿಂತಲೂ ದೊಡ್ಡ ಪ್ರತಿಫಲವನ್ನು ನೀಡಿ ಅನುಗ್ರಹಿಸುತ್ತಾನೆ.

لَّا يَسۡتَوِي ٱلۡقَٰعِدُونَ مِنَ ٱلۡمُؤۡمِنِينَ غَيۡرُ أُوْلِي ٱلضَّرَرِ وَٱلۡمُجَٰهِدُونَ فِي سَبِيلِ ٱللَّهِ بِأَمۡوَٰلِهِمۡ وَأَنفُسِهِمۡۚ فَضَّلَ ٱللَّهُ ٱلۡمُجَٰهِدِينَ بِأَمۡوَٰلِهِمۡ وَأَنفُسِهِمۡ عَلَى ٱلۡقَٰعِدِينَ دَرَجَةٗۚ وَكُلّٗا وَعَدَ ٱللَّهُ ٱلۡحُسۡنَىٰۚ وَفَضَّلَ ٱللَّهُ ٱلۡمُجَٰهِدِينَ عَلَى ٱلۡقَٰعِدِينَ أَجۡرًا عَظِيمٗا ٩٥

---

96. ಅವನ ಕಡೆಯ ಪದವಿಗಳು, ಕ್ಷಮೆ ಮತ್ತು ದಯೆ. ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

دَرَجَٰتٖ مِّنۡهُ وَمَغۡفِرَةٗ وَرَحۡمَةٗۚ وَكَانَ ٱللَّهُ غَفُورٗا رَّحِيمًا ٩٦

---

97. ಸ್ವಯಂ ಅಕ್ರಮವೆಸಗಿದವರ ಆತ್ಮಗಳನ್ನು ವಶಪಡಿಸುವಾಗ ದೇವದೂತರುಗಳು ಕೇಳುವರು: “ನೀವು ಯಾವ ಸ್ಥಿತಿಯಲ್ಲಿ-ದ್ದಿರಿ?” ಅವರು ಹೇಳುವರು: “ನಾವು ಊರಿನಲ್ಲಿ ದಬ್ಬಾಳಿಕೆಗೆ ಗುರಿಯಾಗಿ ಬದುಕುತ್ತಿದ್ದೆವು.” ದೇವದೂತರುಗಳು ಕೇಳುವರು: “ಅಲ್ಲಾಹನ ಭೂಮಿ ವಿಶಾಲವಾಗಿತ್ತಲ್ಲವೇ? ನಿಮಗೆ ನಿಮ್ಮ ಊರನ್ನು ತ್ಯಜಿಸಿ ವಲಸೆ ಹೋಗಬಹುದಿತ್ತಲ್ಲವೇ?” ಅಂತಹವರಿಗೆ ನರಕಾಗ್ನಿಯೇ ವಾಸಸ್ಥಳವಾಗಿದೆ. ಅದು ಬಹಳ ಕೆಟ್ಟ ಗಮ್ಯಸ್ಥಾನ!

إِنَّ ٱلَّذِينَ تَوَفَّىٰهُمُ ٱلۡمَلَٰٓئِكَةُ ظَالِمِيٓ أَنفُسِهِمۡ قَالُواْ فِيمَ كُنتُمۡۖ قَالُواْ كُنَّا مُسۡتَضۡعَفِينَ فِي ٱلۡأَرۡضِۚ قَالُوٓاْ أَلَمۡ تَكُنۡ أَرۡضُ ٱللَّهِ وَٰسِعَةٗ فَتُهَاجِرُواْ فِيهَاۚ فَأُوْلَٰٓئِكَ مَأۡوَىٰهُمۡ جَهَنَّمُۖ وَسَآءَتۡ مَصِيرًا ٩٧

---

98. ಬೇರೆ ಯಾವ ಉಪಾಯವೂ ಇಲ್ಲದೆ (ದಬ್ಬಾಳಿಕೆಯಿಂದ) ಪಾರಾಗುವ ಮಾರ್ಗವನ್ನೂ ತಿಳಿಯದೆ, ದಬ್ಬಾಳಿಕೆಗೆ ಗುರಿಯಾಗಿ ಬದುಕುತ್ತಿರುವ ಪುರುಷರು, ಮಹಿಳೆಯರು ಮತ್ತು ಮಕ್ಕಳು ಇದರಿಂದ ಹೊರತಾಗಿದ್ದಾರೆ.

إِلَّا ٱلۡمُسۡتَضۡعَفِينَ مِنَ ٱلرِّجَالِ وَٱلنِّسَآءِ وَٱلۡوِلۡدَٰنِ لَا يَسۡتَطِيعُونَ حِيلَةٗ وَلَا يَهۡتَدُونَ سَبِيلٗا ٩٨

---

99. ಅವರನ್ನು ಅಲ್ಲಾಹು ಮನ್ನಿಸಲೂ ಬಹುದು. ಅಲ್ಲಾಹು ಮನ್ನಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

فَأُوْلَٰٓئِكَ عَسَى ٱللَّهُ أَن يَعۡفُوَ عَنۡهُمۡۚ وَكَانَ ٱللَّهُ عَفُوًّا غَفُورٗا ٩٩

---

[1] ಯುದ್ಧದಲ್ಲಿ ಒಬ್ಬ ಶತ್ರು ಸೈನಿಕನನ್ನು ಕೊಂದರೆ, ಅವನ ಶಸ್ತ್ರ, ಯುದ್ಧಾಂಗಿ ಮುಂತಾದ ವಸ್ತುಗಳು ಕೊಂದವನಿಗೆ ಸಿಗುತ್ತದೆ. ಈ ಭೌತಿಕ ಲಾಭದ ಮೇಲೆ ಕಣ್ಣಿಟ್ಟು ಯಾರನ್ನೂ ಅನ್ಯಾಯವಾಗಿ ಕೊಲ್ಲಬೇಡಿ. ಹಿಂದಿನ ನಿಮಿಷದ ತನಕ ಶತ್ರುವಾಗಿದ್ದವನು, ನಿಮಗೆ ಸಲಾಂ ಹೇಳಿ ಮುಸಲ್ಮಾನ-ನಾಗಲು ಮುಂದಾದರೆ, ಅವನು ತನ್ನ ಜೀವ ಉಳಿಸುವುದಕ್ಕಾಗಿ ಸಲಾಂ ಹೇಳುತ್ತಿದ್ದಾನೆಂದು ಭಾವಿಸಿ ಅವನನ್ನು ಕೊಲ್ಲಬೇಡಿ. ಹಿಂದೆ ನೀವು ಕೂಡ ಅವನಂತೆಯೇ ಸತ್ಯನಿಷೇಧಿಗಳಾಗಿದ್ದಿರಿ.

100. ಅಲ್ಲಾಹನ ಮಾರ್ಗದಲ್ಲಿ ವಲಸೆ (ಹಿಜ್ರ) ಮಾಡುವವನು ಭೂಮಿಯಲ್ಲಿ ಅನೇಕ ಆಶ್ರಯಗಳನ್ನು ಮತ್ತು ಜೀವನ ವೈಶಾಲ್ಯತೆಗಳನ್ನು ಕಾಣುವನು. ಯಾರು ಅಲ್ಲಾಹು ಮತ್ತು ಅವನ ಸಂದೇಶವಾಹಕರ ಬಳಿಗೆ ವಲಸೆ (ಹಿಜ್ರ) ಮಾಡಲು ಮನೆಯಿಂದ ಹೊರಡುತ್ತಾನೋ—ನಂತರ (ದಾರಿ ಮಧ್ಯೆ) ಸಾವು ಅವನನ್ನು ಅಪ್ಪಿಕೊಂಡರೂ ಸಹ—ಅವನ ಪ್ರತಿಫಲವು ಅಲ್ಲಾಹನ ಬಳಿ ಖಾತ್ರಿಯಾಗಿ ಬಿಟ್ಟಿತು. ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

وَمَن يُهَاجِرۡ فِي سَبِيلِ ٱللَّهِ يَجِدۡ فِي ٱلۡأَرۡضِ مُرَٰغَمٗا كَثِيرٗا وَسَعَةٗۚ وَمَن يَخۡرُجۡ مِنۢ بَيۡتِهِۦ مُهَاجِرًا إِلَى ٱللَّهِ وَرَسُولِهِۦ ثُمَّ يُدۡرِكۡهُ ٱلۡمَوۡتُ فَقَدۡ وَقَعَ أَجۡرُهُۥ عَلَى ٱللَّهِۗ وَكَانَ ٱللَّهُ غَفُورٗا رَّحِيمٗا ١٠٠

101. ನೀವು ಭೂಮಿಯಲ್ಲಿ ಪ್ರಯಾಣ ಮಾಡುವಾಗ ಸತ್ಯನಿಷೇಧಿಗಳು ನಿಮಗೆ ತೊಂದರೆ ಕೊಡುವರೆಂಬ ಭಯವಿದ್ದರೆ, ನಮಾಝನ್ನು ಕುಗ್ಗಿಸಿ (ಎರಡು ರಕಅತ್‌ಗಳಾಗಿ) ನಿರ್ವಹಿಸುವುದರಲ್ಲಿ ನಿಮಗೆ ದೋಷವಿಲ್ಲ.[1] ನಿಶ್ಚಯವಾಗಿಯೂ ಸತ್ಯನಿಷೇಧಿಗಳು ನಿಮ್ಮ ಪ್ರತ್ಯಕ್ಷ ಶತ್ರುಗಳಾಗಿದ್ದಾರೆ.

وَإِذَا ضَرَبۡتُمۡ فِي ٱلۡأَرۡضِ فَلَيۡسَ عَلَيۡكُمۡ جُنَاحٌ أَن تَقۡصُرُواْ مِنَ ٱلصَّلَوٰةِ إِنۡ خِفۡتُمۡ أَن يَفۡتِنَكُمُ ٱلَّذِينَ كَفَرُوٓاْۚ إِنَّ ٱلۡكَٰفِرِينَ كَانُواْ لَكُمۡ عَدُوّٗا مُّبِينٗا ١٠١

102. (ಓ ಪ್ರವಾದಿಯವರೇ!) ನೀವು ಅವರ ಜೊತೆಯಲ್ಲಿರುವಾಗ ಮತ್ತು ಅವರಿಗೆ ಇಮಾಂ ನಿಂತು ನಮಾಝ್ ನಿರ್ವಹಿಸುತ್ತಿರುವಾಗ, ಅವರಲ್ಲೊಂದು ಗುಂಪು ತಮ್ಮ ಜೊತೆಗೆ ನಮಾಝ್ ಮಾಡಲಿ. ಅವರು ತಮ್ಮ ಶಸ್ತ್ರಗಳನ್ನು ಹಿಡಿದುಕೊಂಡಿರಲಿ. ಅವರು ಸುಜೂದ್ ಮಾಡಿದ ನಂತರ ತಮ್ಮ ಹಿಂಭಾಗಕ್ಕೆ ಸರಿದು, ನಮಾಝ್ ನಿರ್ವಹಿಸದ ಇನ್ನೊಂದು ಗುಂಪು ಬಂದು ನಿಮ್ಮೊಂದಿಗೆ ನಮಾಝ್ ನಿರ್ವಹಿಸಲಿ. ಅವರು ಎಚ್ಚರವಾಗಿರಲಿ ಮತ್ತು ತಮ್ಮ ಶಸ್ತ್ರಗಳನ್ನು ಹಿಡಿದುಕೊಂಡಿರಲಿ. ನೀವು ನಿಮ್ಮ ಶಸ್ತ್ರಗಳನ್ನು ಮತ್ತು ನಿಮ್ಮ ಸಾಮಗ್ರಿಗಳನ್ನು ನಿರ್ಲಕ್ಷಿಸಿದರೆ, ನಿಮ್ಮ ಮೇಲೆ ಒಮ್ಮೆಲೇ ದಾಳಿ ಮಾಡಬಹುದೆಂದು ಸತ್ಯನಿಷೇಧಿಗಳು ಬಯಸುತ್ತಾರೆ. ಆದರೆ ನೀವು ಮಳೆಯಿಂದ ತೊಂದರೆ ಅನುಭವಿಸುತ್ತಿದ್ದರೆ, ಅಥವಾ ನೀವು ಅನಾರೋಗ್ಯದಲ್ಲಿದ್ದರೆ, ನಿಮ್ಮ ಶಸ್ತ್ರಗಳನ್ನು ಕೆಳಗಿಡುವುದರಲ್ಲಿ ದೋಷವಿಲ್ಲ. ಆದರೆ ಪೂರ್ಣ ಎಚ್ಚರಿಕೆಯಿಂದಿರಿ. ನಿಶ್ಚಯವಾಗಿಯೂ ಅಲ್ಲಾಹು ಸತ್ಯನಿಷೇಧಿಗಳಿಗೆ ಅವಮಾನಕರ ಶಿಕ್ಷೆಯನ್ನು ಸಿದ್ಧಗೊಳಿಸಿದ್ದಾನೆ.[2]

وَإِذَا كُنتَ فِيهِمۡ فَأَقَمۡتَ لَهُمُ ٱلصَّلَوٰةَ فَلۡتَقُمۡ طَآئِفَةٞ مِّنۡهُم مَّعَكَ وَلۡيَأۡخُذُوٓاْ أَسۡلِحَتَهُمۡۖ فَإِذَا سَجَدُواْ فَلۡيَكُونُواْ مِن وَرَآئِكُمۡ وَلۡتَأۡتِ طَآئِفَةٌ أُخۡرَىٰ لَمۡ يُصَلُّواْ فَلۡيُصَلُّواْ مَعَكَ وَلۡيَأۡخُذُواْ حِذۡرَهُمۡ وَأَسۡلِحَتَهُمۡۗ وَدَّ ٱلَّذِينَ كَفَرُواْ لَوۡ تَغۡفُلُونَ عَنۡ أَسۡلِحَتِكُمۡ وَأَمۡتِعَتِكُمۡ فَيَمِيلُونَ عَلَيۡكُم مَّيۡلَةٗ وَٰحِدَةٗۚ وَلَا جُنَاحَ عَلَيۡكُمۡ إِن كَانَ بِكُمۡ أَذٗى مِّن مَّطَرٍ أَوۡ كُنتُم مَّرۡضَىٰٓ أَن تَضَعُوٓاْ أَسۡلِحَتَكُمۡۖ وَخُذُواْ حِذۡرَكُمۡۗ إِنَّ ٱللَّهَ أَعَدَّ لِلۡكَٰفِرِينَ عَذَابٗا مُّهِينٗا ١٠٢

103. ನೀವು ನಮಾಝ್ ನಿರ್ವಹಿಸಿದ ಬಳಿಕ ನಿಂತು, ಕುಳಿತು ಮತ್ತು

فَإِذَا قَضَيۡتُمُ ٱلصَّلَوٰةَ فَٱذۡكُرُواْ ٱللَّهَ قِيَٰمٗا

[1] ಪ್ರಯಾಣದ ಸಂದರ್ಭದಲ್ಲಿ ನಮಾಝನ್ನು ಕುಗ್ಗಿಸಿ ನಿರ್ವಹಿಸಲು ಅನುಮತಿಯಿದೆ. ಕುಗ್ಗಿಸುವುದು ಎಂದರೆ ಝುಹರ್, ಅಸರ್ ಮತ್ತು ಇಶಾ ನಮಾಝ್‌ಗಳನ್ನು ಎರಡು ರಕಅತ್‌ಗಳಾಗಿ ನಿರ್ವಹಿಸುವುದು. ಮಗ್ರಿಬ್ ನಮಾಝನ್ನು ಕುಗ್ಗಿಸಬಾರದು.

[2] ಇದು ಯುದ್ಧ ಮಾಡುವ ಸಂದರ್ಭದಲ್ಲಿ ನಮಾಝ್ ಹೇಗೆ ನಿರ್ವಹಿಸಬೇಕು ಎಂಬುದರ ವಿವರಣೆಯಾಗಿದೆ. ಇದನ್ನು ಸಲಾತುಲ್ ಖೌಫ್ (ಭಯದ ನಮಾಝ್) ಎಂದು ಕರೆಯಲಾಗುತ್ತದೆ.

وَقُعُودًا وَعَلَىٰ جُنُوبِكُمْۚ فَإِذَا ٱطۡمَأۡنَنتُمۡ فَأَقِيمُواْ ٱلصَّلَوٰةَۚ إِنَّ ٱلصَّلَوٰةَ كَانَتۡ عَلَى ٱلۡمُؤۡمِنِينَ كِتَٰبٗا مَّوۡقُوتٗا ١٠٣

ಪಾರ್ಶ್ವಕ್ಕೆ ಸರಿದು (ಮಲಗಿ) ಅಲ್ಲಾಹನನ್ನು ಸ್ಮರಿಸಿರಿ. ನೀವು ನಿರ್ಭಯರಾಗಿರುವಾಗ, ನಮಾಝನ್ನು ಯಥಾಪ್ರಕಾರ ಸಂಸ್ಥಾಪಿಸಿರಿ. ನಿಶ್ಚಯವಾಗಿಯೂ ನಮಾಝ್ ಸತ್ಯವಿಶ್ವಾಸಿಗಳ ಮೇಲೆ ಸಮಯ ನಿರ್ಣಿತ ಕಡ್ಡಾಯ ಕರ್ಮವಾಗಿದೆ.

---

وَلَا تَهِنُواْ فِي ٱبۡتِغَآءِ ٱلۡقَوۡمِۖ إِن تَكُونُواْ تَأۡلَمُونَ فَإِنَّهُمۡ يَأۡلَمُونَ كَمَا تَأۡلَمُونَۖ وَتَرۡجُونَ مِنَ ٱللَّهِ مَا لَا يَرۡجُونَۗ وَكَانَ ٱللَّهُ عَلِيمًا حَكِيمًا ١٠٤

104. ಶತ್ರುಗಳನ್ನು ಬೆನ್ನಟ್ಟುವುದರಲ್ಲಿ ಬಲಹೀನರಾಗಬೇಡಿ. ನೀವು ನೋವು ಅನುಭವಿಸುತ್ತಿದ್ದರೆ, ಅವರು ಕೂಡ ನಿಮ್ಮಂತೆಯೇ ನೋವು ಅನುಭವಿಸುತ್ತಿದ್ದಾರೆ. ಆದರೆ ನೀವು ಅಲ್ಲಾಹನಿಂದ ಅವರು ನಿರೀಕ್ಷಿಸದೇ ಇರುವುದನ್ನು ನಿರೀಕ್ಷಿಸುತ್ತೀರಿ. ಅಲ್ಲಾಹು ಎಲ್ಲವನ್ನು ತಿಳಿದವನು ಮತ್ತು ವಿವೇಕಪೂರ್ಣನಾಗಿದ್ದಾನೆ.

---

إِنَّآ أَنزَلۡنَآ إِلَيۡكَ ٱلۡكِتَٰبَ بِٱلۡحَقِّ لِتَحۡكُمَ بَيۡنَ ٱلنَّاسِ بِمَآ أَرَىٰكَ ٱللَّهُۚ وَلَا تَكُن لِّلۡخَآئِنِينَ خَصِيمٗا ١٠٥

105. ಅಲ್ಲಾಹು ನಿಮಗೆ ತೋರಿಸಿಕೊಟ್ಟಂತೆ ನೀವು ಜನರ ನಡುವೆ ತೀರ್ಪು ನೀಡಲು ನಾವು ನಿಮಗೆ ಈ ಗ್ರಂಥವನ್ನು ಸತ್ಯಸಹಿತ ಅವತೀರ್ಣಗೊಳಿಸಿದ್ದೇವೆ. ನೀವು ವಂಚಕರಿಗಾಗಿ ತರ್ಕಿಸುವವರಾಗಬೇಡಿ.

---

وَٱسۡتَغۡفِرِ ٱللَّهَۖ إِنَّ ٱللَّهَ كَانَ غَفُورٗا رَّحِيمٗا ١٠٦

106. ಅಲ್ಲಾಹನಲ್ಲಿ ಕ್ಷಮೆಯಾಚಿಸಿರಿ. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

---

وَلَا تُجَٰدِلۡ عَنِ ٱلَّذِينَ يَخۡتَانُونَ أَنفُسَهُمۡۚ إِنَّ ٱللَّهَ لَا يُحِبُّ مَن كَانَ خَوَّانًا أَثِيمٗا ١٠٧

107. ಆತ್ಮವಂಚನೆ ಮಾಡುವವರಿಗಾಗಿ ತರ್ಕಿಸಬೇಡಿ. ನಿಶ್ಚಯವಾಗಿಯೂ ಪಾಪಿಯಾದ ನಯವಂಚಕನನ್ನು ಅಲ್ಲಾಹು ಇಷ್ಟಪಡುವುದಿಲ್ಲ.

---

يَسۡتَخۡفُونَ مِنَ ٱلنَّاسِ وَلَا يَسۡتَخۡفُونَ مِنَ ٱللَّهِ وَهُوَ مَعَهُمۡ إِذۡ يُبَيِّتُونَ مَا لَا يَرۡضَىٰ مِنَ ٱلۡقَوۡلِۚ وَكَانَ ٱللَّهُ بِمَا يَعۡمَلُونَ مُحِيطًا ١٠٨

108. ಅವರು ಜನರಿಂದ (ತಮ್ಮ ನಿಜಬಣ್ಣವನ್ನು) ಅಡಗಿಸುತ್ತಾರೆ. ಆದರೆ ಅಲ್ಲಾಹನಿಂದ ಅಡಗಿಸಲು ಅವರಿಗೆ ಸಾಧ್ಯವಿಲ್ಲ. ಅಲ್ಲಾಹು ಇಷ್ಟಪಡದ ಮಾತುಗಳನ್ನು ಹೇಳುತ್ತಾ, ಅವರು ರಾತ್ರಿಯಲ್ಲಿ ಗೂಢ ಮಾತುಕತೆ ನಡೆಸುವಾಗ ಅವನು ಅವರ ಜೊತೆಯಲ್ಲೇ ಇದ್ದಾನೆ. ಅಲ್ಲಾಹು (ತನ್ನ ಜ್ಞಾನದಿಂದ) ಅವರು ಮಾಡುವುದನ್ನು ಪೂರ್ಣವಾಗಿ ಆವರಿಸಿಕೊಂಡಿದ್ದಾನೆ.

---

هَٰٓأَنتُمۡ هَٰٓؤُلَآءِ جَٰدَلۡتُمۡ عَنۡهُمۡ فِي ٱلۡحَيَوٰةِ ٱلدُّنۡيَا فَمَن يُجَٰدِلُ ٱللَّهَ عَنۡهُمۡ يَوۡمَ ٱلۡقِيَٰمَةِ أَم مَّن يَكُونُ عَلَيۡهِمۡ وَكِيلٗا ١٠٩

109. ಹೌದು, ನೀವು ಇಹಲೋಕ ಜೀವನದಲ್ಲಿ ಅವರಿಗಾಗಿ ತರ್ಕಿಸಿದ್ದೀರಿ. ಆದರೆ ಪುನರುತ್ಥಾನ ದಿನದಂದು ಅವರ ವಿಷಯದಲ್ಲಿ ಅಲ್ಲಾಹನೊಂದಿಗೆ ತರ್ಕಿಸಲು ಯಾರು ಮುಂದೆ ಬರುತ್ತೀರಿ? ಅಥವಾ ಅವರ ವಿಷಯವನ್ನು ಯಾರು ವಹಿಸಿಕೊಳ್ಳುತ್ತೀರಿ?

---

وَمَن يَعۡمَلۡ سُوٓءًا أَوۡ يَظۡلِمۡ نَفۡسَهُۥ ثُمَّ يَسۡتَغۡفِرِ ٱللَّهَ يَجِدِ ٱللَّهَ غَفُورٗا رَّحِيمٗا ١١٠

110. ಪಾಪವನ್ನು ಮಾಡಿದ ನಂತರ, ಅಥವಾ ಸ್ವಯಂ ಅನ್ಯಾಯವೆಸಗಿದ ನಂತರ ಅಲ್ಲಾಹನಲ್ಲಿ ಕ್ಷಮೆಯಾಚಿಸುವವನು ಯಾರೋ—ಅವನು ಅಲ್ಲಾಹನನ್ನು ಕ್ಷಮಿಸುವವನಾಗಿ ಮತ್ತು

ದಯೆ ತೋರುವವನಾಗಿ ಕಾಣುವನು.

---

**111.** ಪಾಪ ಮಾಡುವವನು ಸ್ವಯಂ ತನಗೆ ವಿರುದ್ಧವಾಗಿಯೇ ಅದನ್ನು ಮಾಡುತ್ತಾನೆ. ಅಲ್ಲಾಹು ಎಲ್ಲವನ್ನು ತಿಳಿದವನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَمَن يَكۡسِبۡ إِثۡمٗا فَإِنَّمَا يَكۡسِبُهُۥ عَلَىٰ نَفۡسِهِۦۚ وَكَانَ ٱللَّهُ عَلِيمًا حَكِيمٗا ١١١

---

**112.** ಯಾರು ಒಂದು ತಪ್ಪು ಅಥವಾ ಪಾಪವನ್ನು ಮಾಡಿ, ನಂತರ ಅದನ್ನು ಒಬ್ಬ ಅಮಾಯಕನ ಮೇಲೆ ಹೊರಿಸುತ್ತಾನೋ, ನಿಶ್ಚಯವಾಗಿಯೂ ಅವನು ಸುಳ್ಳಾರೋಪವನ್ನು ಮತ್ತು ಪ್ರತ್ಯಕ್ಷ ಪಾಪವನ್ನು ವಹಿಸಿಕೊಂಡನು.

وَمَن يَكۡسِبۡ خَطِيٓـَٔةً أَوۡ إِثۡمٗا ثُمَّ يَرۡمِ بِهِۦ بَرِيٓـٔٗا فَقَدِ ٱحۡتَمَلَ بُهۡتَٰنٗا وَإِثۡمٗا مُّبِينٗا ١١٢

---

**113.** (ಪ್ರವಾದಿಯವರೇ) ನಿಮ್ಮ ಮೇಲೆ ಅಲ್ಲಾಹನ ಔದಾರ್ಯ ಮತ್ತು ದಯೆಯಿಲ್ಲದಿರುತ್ತಿದ್ದರೆ ಅವರಲ್ಲೊಂದು ಗುಂಪು ನಿಮ್ಮನ್ನು ದಾರಿತಪ್ಪಿಸಲು ಮುಂದಾಗುತ್ತಿದ್ದರು. ಆದರೆ ಅವರು ಸ್ವಯಂ ಅವರನ್ನೇ ದಾರಿತಪ್ಪಿಸುತ್ತಿದ್ದಾರೆ. ಅವರು ನಿಮಗೆ ಯಾವುದೇ ತೊಂದರೆ ಮಾಡಲಾರರು. ಅಲ್ಲಾಹು ನಿಮಗೆ ಗ್ರಂಥವನ್ನು ಮತ್ತು ವಿವೇಕವನ್ನು ಅವತೀರ್ಣಗೊಳಿಸಿದ್ದಾನೆ ಮತ್ತು ನೀವು ತಿಳಿಯದ ವಿಷಯಗಳನ್ನು ನಿಮಗೆ ಕಲಿಸಿದ್ದಾನೆ. ಅಲ್ಲಾಹು ನಿಮ್ಮ ಮೇಲೆ ತೋರಿದ ಔದಾರ್ಯವು ಬಹಳ ದೊಡ್ಡದಾಗಿದೆ.

وَلَوۡلَا فَضۡلُ ٱللَّهِ عَلَيۡكَ وَرَحۡمَتُهُۥ لَهَمَّت طَّآئِفَةٞ مِّنۡهُمۡ أَن يُضِلُّوكَ وَمَا يُضِلُّونَ إِلَّآ أَنفُسَهُمۡۖ وَمَا يَضُرُّونَكَ مِن شَيۡءٖۚ وَأَنزَلَ ٱللَّهُ عَلَيۡكَ ٱلۡكِتَٰبَ وَٱلۡحِكۡمَةَ وَعَلَّمَكَ مَا لَمۡ تَكُن تَعۡلَمُۚ وَكَانَ فَضۡلُ ٱللَّهِ عَلَيۡكَ عَظِيمٗا ١١٣

---

**114.** ಅವರು ಮಾಡುವ ಗೂಢ ಮಾತುಕತೆಗಳಲ್ಲಿ ಯಾವುದೇ ಒಳಿತಿಲ್ಲ. ದಾನ-ಧರ್ಮ ಮಾಡಲು, ಒಳಿತು ಮಾಡಲು ಮತ್ತು ಜನರ ನಡುವೆ ಸಾಮರಸ್ಯ ಮೂಡಿಸಲು ಆದೇಶಿಸುವವರ ಹೊರತು. ಯಾರು ಅಲ್ಲಾಹನ ಸಂಪ್ರೀತಿಯನ್ನು ಬಯಸಿ ಅದನ್ನು ಮಾಡುತ್ತಾನೋ ಅವನಿಗೆ ನಾವು ಸದ್ಯವೇ ಮಹಾ ಪ್ರತಿಫಲವನ್ನು ದಯಪಾಲಿಸುವೆವು.

لَّا خَيۡرَ فِي كَثِيرٖ مِّن نَّجۡوَىٰهُمۡ إِلَّا مَنۡ أَمَرَ بِصَدَقَةٍ أَوۡ مَعۡرُوفٍ أَوۡ إِصۡلَٰحِۭ بَيۡنَ ٱلنَّاسِۚ وَمَن يَفۡعَلۡ ذَٰلِكَ ٱبۡتِغَآءَ مَرۡضَاتِ ٱللَّهِ فَسَوۡفَ نُؤۡتِيهِ أَجۡرًا عَظِيمٗا ١١٤

---

**115.** ಸನ್ಮಾರ್ಗವು ಸ್ಪಷ್ಟವಾದ ಬಳಿಕ ಯಾರು ಸಂದೇಶವಾಹಕರಿಗೆ ವಿರುದ್ಧವಾಗಿ ಚಲಿಸುತ್ತಾನೋ ಮತ್ತು ಸತ್ಯವಿಶ್ವಾಸಿಗಳದ್ದಲ್ಲದ[1] ಮಾರ್ಗವನ್ನು ಅನುಸರಿಸುತ್ತಾನೋ ಅವನು ತಿರುಗಿದ ಮಾರ್ಗಕ್ಕೆ ನಾವು ಅವನನ್ನು ತಿರುಗಿಸುವೆವು ಮತ್ತು ನರಕಾಗ್ನಿಗೆ ಹಾಕಿ ಉರಿಸುವೆವು. ಆ ಗಮ್ಯಸ್ಥಾನವು ಬಹಳ ನಿಕೃಷ್ಟವಾಗಿದೆ!

وَمَن يُشَاقِقِ ٱلرَّسُولَ مِنۢ بَعۡدِ مَا تَبَيَّنَ لَهُ ٱلۡهُدَىٰ وَيَتَّبِعۡ غَيۡرَ سَبِيلِ ٱلۡمُؤۡمِنِينَ نُوَلِّهِۦ مَا تَوَلَّىٰ وَنُصۡلِهِۦ جَهَنَّمَۖ وَسَآءَتۡ مَصِيرًا ١١٥

---

**116.** ತನ್ನೊಂದಿಗೆ ಸಹಭಾಗಿತ್ವ (ಶಿರ್ಕ್) ಮಾಡಲಾಗುವುದನ್ನು ಅಲ್ಲಾಹು ಎಂದಿಗೂ ಕ್ಷಮಿಸುವುದಿಲ್ಲ. ಅದರ ಹೊರತಾದ ಪಾಪಗಳನ್ನು ಅವನು ಇಚ್ಛಿಸುವವರಿಗೆ ಅವನು ಕ್ಷಮಿಸುತ್ತಾನೆ.

إِنَّ ٱللَّهَ لَا يَغۡفِرُ أَن يُشۡرَكَ بِهِۦ وَيَغۡفِرُ مَا دُونَ ذَٰلِكَ لِمَن يَشَآءُۚ وَمَن يُشۡرِكۡ بِٱللَّهِ فَقَدۡ ضَلَّ ضَلَٰلَۢا بَعِيدًا ١١٦

---

[1] ಇಲ್ಲಿ ಸತ್ಯವಿಶ್ವಾಸಿಗಳು ಎಂದರೆ ಸಹಾಬಿಗಳು

ಯಾರು ಅಲ್ಲಾಹನೊಂದಿಗೆ ಸಹಭಾಗಿತ್ವ (ಶಿರ್ಕ್) ಮಾಡುತ್ತಾನೋ ಅವನು ವಿದೂರ ದುರ್ಮಾರ್ಗದಲ್ಲಿ ಬಿದ್ದಿದ್ದಾನೆ.

---

إِن يَدۡعُونَ مِن دُونِهِۦٓ إِلَّآ إِنَٰثٗا وَإِن يَدۡعُونَ إِلَّا شَيۡطَٰنٗا مَّرِيدٗا ١١٧

117. ಅವರು ಅಲ್ಲಾಹನನ್ನು ಬಿಟ್ಟು ಕೆಲವು ದೇವತೆಗಳನ್ನು ಮಾತ್ರ ಕರೆದು ಪ್ರಾರ್ಥಿಸುತ್ತಾರೆ. (ವಾಸ್ತವದಲ್ಲಿ) ಅವರು ಕಡು ಧಿಕ್ಕಾರಿಯಾದ ಶೈತಾನನನ್ನೇ ಕರೆದು ಪ್ರಾರ್ಥಿಸುತ್ತಾರೆ.

---

لَّعَنَهُ ٱللَّهُۘ وَقَالَ لَأَتَّخِذَنَّ مِنۡ عِبَادِكَ نَصِيبٗا مَّفۡرُوضٗا ١١٨

118. ಅಲ್ಲಾಹು ಅವನನ್ನು (ಶೈತಾನನನ್ನು) ಶಪಿಸಿದ್ದಾನೆ. ಅವನು ಹೇಳಿದನು: “ನಿನ್ನ ದಾಸರಲ್ಲಿ ಒಂದು ನಿಶ್ಚಿತ ಪಾಲನ್ನು ನಾನು ವಶಪಡಿಸಿಯೇ ತೀರುವೆನು.

---

وَلَأُضِلَّنَّهُمۡ وَلَأُمَنِّيَنَّهُمۡ وَلَأٓمُرَنَّهُمۡ فَلَيُبَتِّكُنَّ ءَاذَانَ ٱلۡأَنۡعَٰمِ وَلَأٓمُرَنَّهُمۡ فَلَيُغَيِّرُنَّ خَلۡقَ ٱللَّهِۚ وَمَن يَتَّخِذِ ٱلشَّيۡطَٰنَ وَلِيّٗا مِّن دُونِ ٱللَّهِ فَقَدۡ خَسِرَ خُسۡرَانٗا مُّبِينٗا ١١٩

119. ನಾನು ಅವರನ್ನು ಖಂಡಿತ ದಾರಿತಪ್ಪಿಸುವೆನು ಮತ್ತು ಅವರಲ್ಲಿ ಆಸೆಗಳನ್ನು ಹುಟ್ಟಿಸುವೆನು. ನಾನು ಅವರಿಗೆ ಆದೇಶಿಸಿದಾಗ, ಅವರು ಜಾನುವಾರುಗಳ ಕಿವಿಗಳನ್ನು ಹರಿಯುವರು. ನಾನು ಅವರಿಗೆ ಆದೇಶಿಸಿದಾಗ, ಅವರು ಅಲ್ಲಾಹನ ಸಹಜ ಪ್ರಕೃತಿಯನ್ನು ಬದಲಾಯಿಸುವರು.” ಯಾರು ಅಲ್ಲಾಹನನ್ನು ಬಿಟ್ಟು ಶೈತಾನನನ್ನು ರಕ್ಷಕನನ್ನಾಗಿ ಸ್ವೀಕರಿಸುತ್ತಾನೋ—ಅವನು ಅತ್ಯಂತ ಸ್ಪಷ್ಟವಾದ ನಷ್ಟಕ್ಕೊಳಗಾದನು.

---

يَعِدُهُمۡ وَيُمَنِّيهِمۡۖ وَمَا يَعِدُهُمُ ٱلشَّيۡطَٰنُ إِلَّا غُرُورًا ١٢٠

120. ಅವನು (ಶೈತಾನನು) ಅವರಿಗೆ ಆಶ್ವಾಸನೆಗಳನ್ನು ನೀಡುತ್ತಾನೆ ಮತ್ತು ಅವರಲ್ಲಿ ಆಸೆಗಳನ್ನು ಹುಟ್ಟಿಸುತ್ತಾನೆ. ಆದರೆ ಶೈತಾನನು ಅವರಿಗೆ ನೀಡುವ ಆಶ್ವಾಸನೆಗಳು ವಂಚನೆಯಲ್ಲದೆ ಇನ್ನೇನಲ್ಲ.

---

أُوْلَٰٓئِكَ مَأۡوَىٰهُمۡ جَهَنَّمُ وَلَا يَجِدُونَ عَنۡهَا مَحِيصٗا ١٢١

121. ಅವರ ವಾಸಸ್ಥಳವು ನರಕಾಗ್ನಿಯಾಗಿದೆ. ಅದರಿಂದ ತಪ್ಪಿಸಿಕೊಳ್ಳಲು ಅವರು ಯಾವುದೇ ದಾರಿಯನ್ನೂ ಕಾಣಲಾರರು.

---

وَٱلَّذِينَ ءَامَنُواْ وَعَمِلُواْ ٱلصَّٰلِحَٰتِ سَنُدۡخِلُهُمۡ جَنَّٰتٖ تَجۡرِي مِن تَحۡتِهَا ٱلۡأَنۡهَٰرُ خَٰلِدِينَ فِيهَآ أَبَدٗاۖ وَعۡدَ ٱللَّهِ حَقّٗاۚ وَمَنۡ أَصۡدَقُ مِنَ ٱللَّهِ قِيلٗا ١٢٢

122. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ—ಅವರನ್ನು ನಾವು ಸದ್ಯವೇ ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳಿಗೆ ಪ್ರವೇಶ ಮಾಡಿಸುವೆವು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅಲ್ಲಾಹನ ಆಶ್ವಾಸನೆಯು ಸತ್ಯವಾಗಿದೆ. ಮಾತಿನಲ್ಲಿ ಅಲ್ಲಾಹನಿಗಿಂತಲೂ ಹೆಚ್ಚು ಸತ್ಯವಂತನು ಯಾರು?

---

لَّيۡسَ بِأَمَانِيِّكُمۡ وَلَآ أَمَانِيِّ أَهۡلِ ٱلۡكِتَٰبِۗ مَن يَعۡمَلۡ سُوٓءٗا يُجۡزَ بِهِۦ وَلَا يَجِدۡ لَهُۥ مِن دُونِ ٱللَّهِ وَلِيّٗا وَلَا نَصِيرٗا ١٢٣

123. ವಸ್ತುಸ್ಥಿತಿ ನಿಮ್ಮ ಇಷ್ಟದಂತಿಲ್ಲ. ಗ್ರಂಥದವರ ಇಷ್ಟದಂತೆಯೂ ಇಲ್ಲ. ಪಾಪ ಮಾಡಿದವನಿಗೆ ಅದರ ಪ್ರತಿಫಲವನ್ನು ನೀಡಲಾಗುತ್ತದೆ. ಅಲ್ಲಾಹನ ಹೊರತು ಬೇರೆ ಯಾವುದೇ ರಕ್ಷಕನನ್ನು ಅಥವಾ ಸಹಾಯಕನನ್ನು ಅವನು ಕಾಣಲಾರ.

124. ಸತ್ಯವಿಶ್ವಾಸಿಯಾಗಿದ್ದು ಸತ್ಕರ್ಮವೆಸಗುವವರು ಯಾರೋ—ಅವರು ಗಂಡಾಗಿರಲಿ ಅಥವಾ ಹೆಣ್ಣಾಗಿರಲಿ—ಅವರು ಸ್ವರ್ಗವನ್ನು ಪ್ರವೇಶಿಸುವರು. ಅವರಿಗೆ ಖರ್ಜೂರ ಬೀಜದ ಪೊರೆಯ ಗಾತ್ರದಷ್ಟು ಸಹ ಅನ್ಯಾಯವಾಗುವುದಿಲ್ಲ.

وَمَن يَعۡمَلۡ مِنَ ٱلصَّٰلِحَٰتِ مِن ذَكَرٍ أَوۡ أُنثَىٰ وَهُوَ مُؤۡمِنٞ فَأُوْلَٰٓئِكَ يَدۡخُلُونَ ٱلۡجَنَّةَ وَلَا يُظۡلَمُونَ نَقِيرٗا ١٢٤

125. ಒಳಿತು ಮಾಡುತ್ತಾ ತನ್ನ ಮುಖವನ್ನು ಅಲ್ಲಾಹನಿಗೆ ಶರಣಾಗಿಸುವವನು ಮತ್ತು ಏಕನಿಷ್ಠರಾದ ಇಬ್ರಾಹೀಮರ ಮಾರ್ಗವನ್ನು ಹಿಂಬಾಲಿಸುವವನಿಗಿಂತ ಧರ್ಮದ ವಿಷಯದಲ್ಲಿ ಉತ್ತಮನಾಗಿರುವವನು ಯಾರು? ಅಲ್ಲಾಹು ಇಬ್ರಾಹೀಮರನ್ನು ಆಪ್ತಮಿತ್ರನಾಗಿ ಸ್ವೀಕರಿಸಿದ್ದಾನೆ.[1]

وَمَنۡ أَحۡسَنُ دِينٗا مِّمَّنۡ أَسۡلَمَ وَجۡهَهُۥ لِلَّهِ وَهُوَ مُحۡسِنٞ وَٱتَّبَعَ مِلَّةَ إِبۡرَٰهِيمَ حَنِيفٗاۗ وَٱتَّخَذَ ٱللَّهُ إِبۡرَٰهِيمَ خَلِيلٗا ١٢٥

126. ಭೂಮ್ಯಾಕಾಶಗಳಲ್ಲಿರುವುದೆಲ್ಲವೂ ಅಲ್ಲಾಹನಿಗೆ ಸೇರಿದ್ದು. ಅಲ್ಲಾಹು ಎಲ್ಲಾ ವಿಷಯಗಳನ್ನೂ ಆವರಿಸಿಕೊಂಡಿದ್ದಾನೆ.

وَلِلَّهِ مَا فِي ٱلسَّمَٰوَٰتِ وَمَا فِي ٱلۡأَرۡضِۚ وَكَانَ ٱللَّهُ بِكُلِّ شَيۡءٖ مُّحِيطٗا ١٢٦

127. ಅವರು ತಮ್ಮೊಡನೆ ಮಹಿಳೆಯರ ವಿಷಯದಲ್ಲಿ ಧರ್ಮವಿಧಿಯನ್ನು ಕೇಳುತ್ತಾರೆ. ಹೇಳಿರಿ: “ಅಲ್ಲಾಹು ನಿಮಗೆ ಅವರ (ಮಹಿಳೆಯರ) ವಿಷಯದಲ್ಲಿ—ಅವರಿಗೆ ನಿಶ್ಚಯಿಸಲಾದ ಹಕ್ಕನ್ನು ನೀಡದೆ ನೀವು ವಿವಾಹವಾಗಲು ಬಯಸುವ ಅನಾಥ ಹೆಣ್ಣುಮಕ್ಕಳ ವಿಷಯದಲ್ಲಿ, ದುರ್ಬಲ ಮಕ್ಕಳ ವಿಷಯದಲ್ಲಿ ಮತ್ತು ಅನಾಥರೊಡನೆ ನ್ಯಾಯನಿಷ್ಠೆಯಿಂದ ವರ್ತಿಸಬೇಕೆಂಬ ವಿಷಯದಲ್ಲಿ ಧರ್ಮವಿಧಿ ನೀಡುತ್ತಾನೆ.” ನೀವು ಏನೇ ಒಳಿತು ಮಾಡಿದರೂ ನಿಶ್ಚಯವಾಗಿಯೂ ಅಲ್ಲಾಹು ಅದನ್ನು ತಿಳಿಯುತ್ತಾನೆ.

وَيَسۡتَفۡتُونَكَ فِي ٱلنِّسَآءِۖ قُلِ ٱللَّهُ يُفۡتِيكُمۡ فِيهِنَّ وَمَا يُتۡلَىٰ عَلَيۡكُمۡ فِي ٱلۡكِتَٰبِ فِي يَتَٰمَى ٱلنِّسَآءِ ٱلَّٰتِي لَا تُؤۡتُونَهُنَّ مَا كُتِبَ لَهُنَّ وَتَرۡغَبُونَ أَن تَنكِحُوهُنَّ وَٱلۡمُسۡتَضۡعَفِينَ مِنَ ٱلۡوِلۡدَٰنِ وَأَن تَقُومُواْ لِلۡيَتَٰمَىٰ بِٱلۡقِسۡطِۚ وَمَا تَفۡعَلُواْ مِنۡ خَيۡرٖ فَإِنَّ ٱللَّهَ كَانَ بِهِۦ عَلِيمٗا ١٢٧

128. ಒಬ್ಬ ಮಹಿಳೆ ತನ್ನ ಗಂಡನಿಂದ ಕೆಟ್ಟ ವರ್ತನೆ ಅಥವಾ ಅವಗಣನೆಯನ್ನು ಭಯಪಟ್ಟರೆ, ಅವರಿಬ್ಬರು ಸೇರಿ ಅದನ್ನು ಇತ್ಯರ್ಥ ಮಾಡಿಕೊಳ್ಳುವುದರಲ್ಲಿ ಅವರಿಬ್ಬರಿಗೂ ದೋಷವಿಲ್ಲ. ಇತ್ಯರ್ಥ ಮಾಡುವುದು ಉತ್ತಮವಾಗಿದೆ. ಮನಸ್ಸುಗಳಲ್ಲಿ ಜಿಪುಣತನವು ಇದ್ದೇ ಇದೆ. ನೀವು ಒಳಿತು ಮಾಡುವವರು ಮತ್ತು ದೇವಭಯವುಳ್ಳವರಾಗಿದ್ದರೆ, ನಿಶ್ಚಯವಾಗಿಯೂ ನೀವು ಮಾಡುವುದನ್ನು ಅಲ್ಲಾಹು ಸೂಕ್ಷ್ಮವಾಗಿ ತಿಳಿಯುತ್ತಿದ್ದಾನೆ.

وَإِنِ ٱمۡرَأَةٌ خَافَتۡ مِنۢ بَعۡلِهَا نُشُوزًا أَوۡ إِعۡرَاضٗا فَلَا جُنَاحَ عَلَيۡهِمَآ أَن يُصۡلِحَا بَيۡنَهُمَا صُلۡحٗاۚ وَٱلصُّلۡحُ خَيۡرٞۗ وَأُحۡضِرَتِ ٱلۡأَنفُسُ ٱلشُّحَّۚ وَإِن تُحۡسِنُواْ وَتَتَّقُواْ فَإِنَّ ٱللَّهَ كَانَ بِمَا تَعۡمَلُونَ خَبِيرٗا ١٢٨

[1] ಇಸ್ಲಾಂ ಎಂದರೆ ಒಬ್ಬ ವ್ಯಕ್ತಿ ತನ್ನನ್ನು ತಾನೇ ಅಲ್ಲಾಹನ ಇಚ್ಛೆಗೆ ಶರಣಾಗಿಸುವುದು. ಅಂದರೆ ಅಲ್ಲಾಹನ ಆಜ್ಞೆಗಳನ್ನು ಅನುಸರಿಸುತ್ತಾ ಅವನು ವಿರೋಧಿಸಿದ ವಿಷಯಗಳಿಂದ ದೂರವಿದ್ದು ಅವನನ್ನು ಭಯಪಡುತ್ತಾ ಜೀವಿಸುವುದು. ಅಲ್ಲಾಹನ ಆಜ್ಞೆಗಳನ್ನು ಯಾವುದೇ ಹಿಂಜರಿಕೆಯಿಲ್ಲದೆ ಅಕ್ಷರಶಃ ಪಾಲಿಸಿದ್ದರಿಂದ ಅಲ್ಲಾಹು ಇಬ್ರಾಹೀಮರನ್ನು (ಅವರ ಮೇಲೆ ಶಾಂತಿಯಿರಲಿ) ಆಪ್ತಮಿತ್ರನಾಗಿ ಸ್ವೀಕರಿಸಿದನು. ಅಲ್ಲಾಹು ಪ್ರವಾದಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರನ್ನು ಕೂಡ ಆಪ್ತಮಿತ್ರನಾಗಿ ಸ್ವೀಕರಿಸಿದ್ದಾನೆಂದು ಹದೀಸ್‌ಗಳಲ್ಲಿ ಉಲ್ಲೇಖವಿದೆ.

129. ನೀವು ಎಷ್ಟೇ ಆಸಕ್ತಿ ವಹಿಸಿದರೂ ಪತ್ನಿಯರ ನಡುವೆ ನ್ಯಾಯನಿಷ್ಠೆಯಿಂದ ವರ್ತಿಸಲು ನಿಮಗೆ ಖಂಡಿತ ಸಾಧ್ಯವಿಲ್ಲ. ಆದ್ದರಿಂದ ನೀವು ಒಬ್ಬಳ ಕಡೆಗೆ ಸಂಪೂರ್ಣ ಆಕರ್ಷಿತರಾಗಿ ಇನ್ನೊಬ್ಬಳನ್ನು ತೂಗು ಹಾಕಲಾದವಳಂತೆ ಬಿಟ್ಟುಬಿಡಬೇಡಿ. ನೀವು (ನಿಮ್ಮ ವರ್ತನೆಯನ್ನು) ಸುಧಾರಿಸಿದರೆ ಮತ್ತು ಅಲ್ಲಾಹನನ್ನು ಭಯಪಟ್ಟರೆ, ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

وَلَن تَسۡتَطِيعُوٓاْ أَن تَعۡدِلُواْ بَيۡنَ ٱلنِّسَآءِ وَلَوۡ حَرَصۡتُمۡۖ فَلَا تَمِيلُواْ كُلَّ ٱلۡمَيۡلِ فَتَذَرُوهَا كَٱلۡمُعَلَّقَةِۚ وَإِن تُصۡلِحُواْ وَتَتَّقُواْ فَإِنَّ ٱللَّهَ كَانَ غَفُورٗا رَّحِيمٗا ١٢٩

130. ಆದರೆ ಅವರಿಬ್ಬರು ಬೇರ್ಪಡುವುದಾದರೆ, ಅಲ್ಲಾಹು ತನ್ನ ವಿಶಾಲ ಸಾಮರ್ಥ್ಯದಿಂದ ಅವರಿಬ್ಬರಲ್ಲಿ ಪ್ರತಿಯೊಬ್ಬರಿಗೂ ಸ್ವಾವಲಂಬನೆಯನ್ನು ನೀಡುವನು. ಅಲ್ಲಾಹು ವಿಶಾಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَإِن يَتَفَرَّقَا يُغۡنِ ٱللَّهُ كُلّٗا مِّن سَعَتِهِۦۚ وَكَانَ ٱللَّهُ وَٰسِعًا حَكِيمٗا ١٣٠

131. ಭೂಮ್ಯಾಕಾಶಗಳಲ್ಲಿರುವುದೆಲ್ಲವೂ ಅಲ್ಲಾಹನಿಗೆ ಸೇರಿದ್ದು. "ಅಲ್ಲಾಹನನ್ನು ಭಯಪಡಿರಿ" ಎಂದು ನಾವು ನಿಮಗೂ ನಿಮಗಿಂತ ಮೊದಲು ಗ್ರಂಥ ನೀಡಲಾದವರಿಗೂ ಆದೇಶಿಸಿದ್ದೇವೆ. ನೀವು ನಿಷೇಧಿಸಿದರೆ (ಅದರಿಂದ ಅಲ್ಲಾಹನಿಗೇನೂ ನಷ್ಟವಿಲ್ಲ). ಭೂಮ್ಯಾಕಾಶಗಳಲ್ಲಿರುವುದೆಲ್ಲವೂ ಅಲ್ಲಾಹನಿಗೆ ಸೇರಿದ್ದು. ಅಲ್ಲಾಹು ನಿರಪೇಕ್ಷನು ಮತ್ತು ಸ್ತುತ್ಯರ್ಹನಾಗಿದ್ದಾನೆ.

وَلِلَّهِ مَا فِي ٱلسَّمَٰوَٰتِ وَمَا فِي ٱلۡأَرۡضِۗ وَلَقَدۡ وَصَّيۡنَا ٱلَّذِينَ أُوتُواْ ٱلۡكِتَٰبَ مِن قَبۡلِكُمۡ وَإِيَّاكُمۡ أَنِ ٱتَّقُواْ ٱللَّهَۚ وَإِن تَكۡفُرُواْ فَإِنَّ لِلَّهِ مَا فِي ٱلسَّمَٰوَٰتِ وَمَا فِي ٱلۡأَرۡضِۚ وَكَانَ ٱللَّهُ غَنِيًّا حَمِيدٗا ١٣١

132. ಭೂಮ್ಯಾಕಾಶಗಳಲ್ಲಿರುವುದೆಲ್ಲವೂ ಅಲ್ಲಾಹನಿಗೆ ಸೇರಿದ್ದು. ಕಾರ್ಯನಿರ್ವಾಹಕನಾಗಿ ಅಲ್ಲಾಹು ಸಾಕು.

وَلِلَّهِ مَا فِي ٱلسَّمَٰوَٰتِ وَمَا فِي ٱلۡأَرۡضِۚ وَكَفَىٰ بِٱللَّهِ وَكِيلًا ١٣٢

133. ಓ ಜನರೇ! ಅಲ್ಲಾಹು ಇಚ್ಛಿಸಿದರೆ ಅವನು ನಿಮ್ಮನ್ನು ತೊಲಗಿಸಿ ಬೇರೆ ಜನರನ್ನು ತರುವನು. ಅಲ್ಲಾಹನಿಗೆ ಅದರಲ್ಲಿ ಸಂಪೂರ್ಣ ಸಾಮರ್ಥ್ಯವಿದೆ.

إِن يَشَأۡ يُذۡهِبۡكُمۡ أَيُّهَا ٱلنَّاسُ وَيَأۡتِ بِـَٔاخَرِينَۚ وَكَانَ ٱللَّهُ عَلَىٰ ذَٰلِكَ قَدِيرٗا ١٣٣

134. ಯಾರು ಇಹಲೋಕದ ಪ್ರತಿಫಲವನ್ನು ಬಯಸುತ್ತಾನೋ—ಅಲ್ಲಾಹನ ಬಳಿ ಇಹಲೋಕ ಮತ್ತು ಪರಲೋಕಗಳ ಪ್ರತಿಫಲವಿದೆ (ಎಂದು ಅವನಿಗೆ ತಿಳಿದಿರಲಿ). ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ನೋಡುವವನಾಗಿದ್ದಾನೆ.

مَّن كَانَ يُرِيدُ ثَوَابَ ٱلدُّنۡيَا فَعِندَ ٱللَّهِ ثَوَابُ ٱلدُّنۡيَا وَٱلۡأٓخِرَةِۚ وَكَانَ ٱللَّهُ سَمِيعَۢا بَصِيرٗا ١٣٤

135. ಓ ಸತ್ಯವಿಶ್ವಾಸಿಗಳೇ! ನೀವು ಅಲ್ಲಾಹನಿಗೆ ಸಾಕ್ಷಿಯಾಗಿದ್ದು, ನ್ಯಾಯ ನಿಷ್ಠೆಯಲ್ಲಿ ಸದಾ ದೃಢವಾಗಿ ನಿಲ್ಲಿರಿ. ಅದು ನಿಮಗೆ, ನಿಮ್ಮ ತಂದೆ-ತಾಯಿಗಳಿಗೆ, ಅಥವಾ ಹತ್ತಿರದ ಸಂಬಂಧಿಕರಿಗೆ ವಿರುದ್ಧವಾಗಿದ್ದರೂ ಸಹ. ಶ್ರೀಮಂತನಾಗಿರಲಿ ಅಥವಾ ಬಡವನಾಗಿರಲಿ—ಇಬ್ಬರಿಗೂ ಅಲ್ಲಾಹು ಬಹಳ ಹತ್ತಿರದಲ್ಲಿದ್ದಾನೆ. ಆದ್ದರಿಂದ ನೀವು

يَٰٓأَيُّهَا ٱلَّذِينَ ءَامَنُواْ كُونُواْ قَوَّٰمِينَ بِٱلۡقِسۡطِ شُهَدَآءَ لِلَّهِ وَلَوۡ عَلَىٰٓ أَنفُسِكُمۡ أَوِ ٱلۡوَٰلِدَيۡنِ وَٱلۡأَقۡرَبِينَۚ إِن يَكُنۡ غَنِيًّا أَوۡ فَقِيرٗا فَٱللَّهُ أَوۡلَىٰ بِهِمَاۖ فَلَا تَتَّبِعُواْ ٱلۡهَوَىٰٓ أَن تَعۡدِلُواْۚ وَإِن

ಸ್ವೇಚ್ಛೆಗಳನ್ನು ಹಿಂಬಾಲಿಸಿ ನ್ಯಾಯ ತಪ್ಪಿ ನಡೆಯಬೇಡಿ. ನೀವು (ಸಾಕ್ಷ್ಯವನ್ನು) ತಿರುಚಿದರೆ, ಅಥವಾ (ಸಾಕ್ಷಿ ನುಡಿಯದೆ) ಹಿಂದೆ ಸರಿದರೆ, ನಿಶ್ಚಯವಾಗಿಯೂ ನೀವು ಮಾಡುವುದನ್ನು ಅಲ್ಲಾಹು ಸೂಕ್ಷ್ಮವಾಗಿ ತಿಳಿಯುತ್ತಾನೆ.

تَلْوُۥٓا۟ أَوْ تُعْرِضُوا۟ فَإِنَّ ٱللَّهَ كَانَ بِمَا تَعْمَلُونَ خَبِيرًا ﴿١٣٥﴾

---

136. ಓ ಸತ್ಯವಿಶ್ವಾಸಿಗಳೇ! ನೀವು ಅಲ್ಲಾಹನಲ್ಲಿ, ಅವನ ಸಂದೇಶವಾಹಕರಲ್ಲಿ, ಅವನ ಸಂದೇಶವಾಹಕರಿಗೆ ಅವತೀರ್ಣವಾದ ಗ್ರಂಥದಲ್ಲಿ ಮತ್ತು ಅವರಿಗಿಂತ ಮೊದಲು ಅವತೀರ್ಣವಾದ ಗ್ರಂಥಗಳಲ್ಲಿ ವಿಶ್ವಾಸವಿಡಿ. ಯಾರು ಅಲ್ಲಾಹನನ್ನು, ಅವನ ದೇವದೂತರುಗಳನ್ನು, ಅವನ ಗ್ರಂಥಗಳನ್ನು, ಅವನ ಸಂದೇಶವಾಹಕರುಗಳನ್ನು ಮತ್ತು ಅಂತ್ಯದಿನವನ್ನು ನಿಷೇಧಿಸುತ್ತಾನೋ—ಅವನು ವಿದೂರ ದುರ್ಮಾರ್ಗದಲ್ಲಿ ದಾರಿತಪ್ಪಿದ್ದಾನೆ.

يَٰٓأَيُّهَا ٱلَّذِينَ ءَامَنُوٓا۟ ءَامِنُوا۟ بِٱللَّهِ وَرَسُولِهِۦ وَٱلْكِتَٰبِ ٱلَّذِى نَزَّلَ عَلَىٰ رَسُولِهِۦ وَٱلْكِتَٰبِ ٱلَّذِىٓ أَنزَلَ مِن قَبْلُ ۚ وَمَن يَكْفُرْ بِٱللَّهِ وَمَلَٰٓئِكَتِهِۦ وَكُتُبِهِۦ وَرُسُلِهِۦ وَٱلْيَوْمِ ٱلْءَاخِرِ فَقَدْ ضَلَّ ضَلَٰلًۢا بَعِيدًا ﴿١٣٦﴾

---

137. ನಿಶ್ಚಯವಾಗಿಯೂ, ಸತ್ಯವಿಶ್ವಾಸ ಸ್ವೀಕರಿಸಿದ ನಂತರ ಸತ್ಯನಿಷೇಧಿಗಳಾದವರು, ನಂತರ ಪುನಃ ಸತ್ಯವಿಶ್ವಾಸಿಗಳಾಗಿ ಪುನಃ ಸತ್ಯನಿಷೇಧಿಗಳಾದವರು, ನಂತರ ಸತ್ಯನಿಷೇಧವನ್ನು ಹೆಚ್ಚಿಸುತ್ತಲೇ ಹೋದವರು ಯಾರೋ—ಅವರಿಗೆ ಅಲ್ಲಾಹು ಕ್ಷಮಿಸುವುದಿಲ್ಲ. ಅವರಿಗೆ ಸರಿದಾರಿಯನ್ನು ತೋರಿಸುವುದೂ ಇಲ್ಲ.

إِنَّ ٱلَّذِينَ ءَامَنُوا۟ ثُمَّ كَفَرُوا۟ ثُمَّ ءَامَنُوا۟ ثُمَّ كَفَرُوا۟ ثُمَّ ٱزْدَادُوا۟ كُفْرًا لَّمْ يَكُنِ ٱللَّهُ لِيَغْفِرَ لَهُمْ وَلَا لِيَهْدِيَهُمْ سَبِيلًۢا ﴿١٣٧﴾

---

138. ಕಪಟವಿಶ್ವಾಸಿಗಳಿಗೆ ಯಾತನಾಮಯ ಶಿಕ್ಷೆಯಿದೆಯೆಂಬ ಸುವಾರ್ತೆಯನ್ನು ತಿಳಿಸಿರಿ.

بَشِّرِ ٱلْمُنَٰفِقِينَ بِأَنَّ لَهُمْ عَذَابًا أَلِيمًا ﴿١٣٨﴾

---

139. ಸತ್ಯವಿಶ್ವಾಸಿಗಳನ್ನು ಬಿಟ್ಟು ಸತ್ಯನಿಷೇಧಿಗಳನ್ನು ಆಪ್ತಮಿತ್ರರನ್ನಾಗಿ ಸ್ವೀಕರಿಸಿದವರು ಯಾರೋ—ಅವರು ಸತ್ಯನಿಷೇಧಿಗಳ ಬಳಿ ಪ್ರತಿಷ್ಠೆಯನ್ನು ಹುಡುಕುತ್ತಿದ್ದಾರೆಯೇ? ನಿಶ್ಚಯವಾಗಿಯೂ ಪ್ರತಿಷ್ಠೆಯು ಸಂಪೂರ್ಣವಾಗಿ ಅಲ್ಲಾಹನ ವಶದಲ್ಲಿದೆ (ಎಂದು ಅವರು ತಿಳಿದಿರಲಿ).

ٱلَّذِينَ يَتَّخِذُونَ ٱلْكَٰفِرِينَ أَوْلِيَآءَ مِن دُونِ ٱلْمُؤْمِنِينَ ۚ أَيَبْتَغُونَ عِندَهُمُ ٱلْعِزَّةَ فَإِنَّ ٱلْعِزَّةَ لِلَّهِ جَمِيعًا ﴿١٣٩﴾

---

140. ಜನರು ಅಲ್ಲಾಹನ ವಚನಗಳನ್ನು ನಿಷೇಧಿಸುವುದನ್ನು ಮತ್ತು ತಮಾಷೆ ಮಾಡುವುದನ್ನು ಕೇಳಿದರೆ, ಅವರು ಬೇರೆ ವಿಷಯದಲ್ಲಿ ಪ್ರವೇಶಿಸುವ ತನಕ ಅವರೊಡನೆ ಕುಳಿತುಕೊಳ್ಳಬೇಡಿ ಎಂಬ ಆದೇಶವನ್ನು ಗ್ರಂಥದಲ್ಲಿ ಈಗಾಗಲೇ ನಿಮಗೆ ಅವತೀರ್ಣಗೊಳಿಸಲಾಗಿದೆ.[1] ಅವರೊಡನೆ ಕುಳಿತುಕೊಂಡರೆ ನೀವು ಕೂಡ ಅವರಂತೆಯೇ ಆಗುವಿರಿ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ಕಪಟವಿಶ್ವಾಸಿಗಳನ್ನು ಮತ್ತು ಸತ್ಯನಿಷೇಧಿಗಳನ್ನು ನರಕಾಗ್ನಿಯಲ್ಲಿ ಒಟ್ಟುಗೂಡಿಸುವನು.

وَقَدْ نَزَّلَ عَلَيْكُمْ فِى ٱلْكِتَٰبِ أَنْ إِذَا سَمِعْتُمْ ءَايَٰتِ ٱللَّهِ يُكْفَرُ بِهَا وَيُسْتَهْزَأُ بِهَا فَلَا تَقْعُدُوا۟ مَعَهُمْ حَتَّىٰ يَخُوضُوا۟ فِى حَدِيثٍ غَيْرِهِۦٓ ۚ إِنَّكُمْ إِذًا مِّثْلُهُمْ ۗ إِنَّ ٱللَّهَ جَامِعُ ٱلْمُنَٰفِقِينَ وَٱلْكَٰفِرِينَ فِى جَهَنَّمَ جَمِيعًا ﴿١٤٠﴾

---

[1] ಈ ವಚನವು ಅವತೀರ್ಣವಾದದ್ದು ಮದೀನದಲ್ಲಿ. ಇದಕ್ಕೆ ಮೊದಲು ಮಕ್ಕಾದಲ್ಲಿ ಇದೇ ವಿಷಯದ ಕುರಿತು ವಚನವು ಅವತೀರ್ಣವಾಗಿತ್ತು. (ನೋಡಿ 6:68)

141. ಅವರು ನಿಮ್ಮನ್ನು ಕಾದು ನೋಡುತ್ತಾರೆ. ನಿಮಗೆ ಅಲ್ಲಾಹನಿಂದ ಗೆಲುವು ಪ್ರಾಪ್ತವಾದರೆ, "ನಾವು ನಿಮ್ಮೊಂದಿಗೆ ಇರಲಿಲ್ಲವೇ?" ಎಂದು ಅವರು (ನಿಮ್ಮೊಂದಿಗೆ) ಕೇಳುತ್ತಾರೆ. ಗೆಲುವು ಸತ್ಯನಿಷೇಧಿಗಳ ಪಾಲಾದರೆ (ಅವರ ಬಳಿಗೆ ಹೋಗಿ), "ನಿಮ್ಮ ಮೇಲೆ ಗೆಲುವು ಪಡೆಯುವ ಸಾಧ್ಯತೆಯಿದ್ದೂ ಸಹ ನಾವು ನಿಮ್ಮನ್ನು ಸತ್ಯವಿಶ್ವಾಸಿಗಳಿಂದ ರಕ್ಷಿಸಲಿಲ್ಲವೇ?" ಎಂದು ಕೇಳುತ್ತಾರೆ. ಪುನರುತ್ಥಾನ ದಿನದಂದು ಅಲ್ಲಾಹು ನಿಮ್ಮ ನಡುವೆ ತೀರ್ಪು ನೀಡುವನು. ಅಲ್ಲಾಹು ಸತ್ಯವಿಶ್ವಾಸಿಗಳ ಮೇಲೆ ಸತ್ಯನಿ-ಷೇಧಿಗಳಿಗೆ ಯಾವುದೇ ಮಾರ್ಗವನ್ನು ಮಾಡಿಕೊಡುವುದಿಲ್ಲ.

ٱلَّذِينَ يَتَرَبَّصُونَ بِكُمۡ فَإِن كَانَ لَكُمۡ
فَتۡحٞ مِّنَ ٱللَّهِ قَالُوٓاْ أَلَمۡ نَكُن مَّعَكُمۡ وَإِن
كَانَ لِلۡكَٰفِرِينَ نَصِيبٞ قَالُوٓاْ أَلَمۡ نَسۡتَحۡوِذۡ
عَلَيۡكُمۡ وَنَمۡنَعۡكُم مِّنَ ٱلۡمُؤۡمِنِينَۚ فَٱللَّهُ
يَحۡكُمُ بَيۡنَكُمۡ يَوۡمَ ٱلۡقِيَٰمَةِۗ وَلَن يَجۡعَلَ ٱللَّهُ
لِلۡكَٰفِرِينَ عَلَى ٱلۡمُؤۡمِنِينَ سَبِيلًا ١٤١

142. ನಿಶ್ಚಯವಾಗಿಯೂ ಕಪಟವಿಶ್ವಾಸಿಗಳು ಅಲ್ಲಾಹನನ್ನು ವಂಚಿಸಬಹುದೆಂದು (ಭಾವಿಸುತ್ತಾರೆ). ಆದರೆ, (ವಾಸ್ತವವಾಗಿ) ಅಲ್ಲಾಹನೇ ಅವರನ್ನು ವಂಚಿಸುತ್ತಿದ್ದಾನೆ.[1] ಅವರು ನಮಾಝ್ ಮಾಡಲು ನಿಲ್ಲುವಾಗ ಉದಾಸೀನರಾಗಿ ಮತ್ತು ಜನರಿಗೆ ತೋರಿಸುವುದಕ್ಕಾಗಿ ನಿಲ್ಲುತ್ತಾರೆ. ಅವರು ಅಲ್ಲಾಹನನ್ನು ಸ್ವಲ್ಪ ಮಾತ್ರ ಸ್ಮರಿಸುತ್ತಾರೆ.

إِنَّ ٱلۡمُنَٰفِقِينَ يُخَٰدِعُونَ ٱللَّهَ وَهُوَ خَٰدِعُهُمۡ
وَإِذَا قَامُوٓاْ إِلَى ٱلصَّلَوٰةِ قَامُواْ كُسَالَىٰ يُرَآءُونَ
ٱلنَّاسَ وَلَا يَذۡكُرُونَ ٱللَّهَ إِلَّا قَلِيلٗا ١٤٢

143. ಅವರು ಎರಡು ಗುಂಪುಗಳ ಮಧ್ಯೆ ತೊಳಲಾಡುತ್ತಾರೆ. ಆ ಗುಂಪಿಗೂ ಸೇರುವುದಿಲ್ಲ; ಈ ಗುಂಪಿಗೂ ಸೇರುವುದಿಲ್ಲ. ಅಲ್ಲಾಹು ಯಾರನ್ನು ದಾರಿತಪ್ಪಿಸುತ್ತಾನೋ ಅವನಿಗೆ ಯಾವುದೇ ದಾರಿಯನ್ನು ನೀವು ಕಾಣಲಾರಿರಿ.

مُّذَبۡذَبِينَ بَيۡنَ ذَٰلِكَ لَآ إِلَىٰ هَٰٓؤُلَآءِ وَلَآ
إِلَىٰ هَٰٓؤُلَآءِۚ وَمَن يُضۡلِلِ ٱللَّهُ فَلَن تَجِدَ لَهُۥ
سَبِيلٗا ١٤٣

144. ಓ ಸತ್ಯವಿಶ್ವಾಸಿಗಳೇ! ನೀವು ಸತ್ಯವಿಶ್ವಾಸಿಗಳನ್ನು ಬಿಟ್ಟು ಸತ್ಯನಿ-ಷೇಧಿಗಳನ್ನು ಆಪ್ತಮಿತ್ರರನ್ನಾಗಿ ಸ್ವೀಕರಿಸಬೇಡಿ. ನಿಮ್ಮ ವಿರುದ್ಧ ಅಲ್ಲಾಹನಿಗೆ ಸ್ಪಷ್ಟ ಸಾಕ್ಷ್ಯಾಧಾರವನ್ನು ಮಾಡಿಕೊಡಲು ನೀವು ಬಯಸುತ್ತೀರಾ?

يَٰٓأَيُّهَا ٱلَّذِينَ ءَامَنُواْ لَا تَتَّخِذُواْ ٱلۡكَٰفِرِينَ
أَوۡلِيَآءَ مِن دُونِ ٱلۡمُؤۡمِنِينَۚ أَتُرِيدُونَ أَن تَجۡعَلُواْ
لِلَّهِ عَلَيۡكُمۡ سُلۡطَٰنٗا مُّبِينًا ١٤٤

145. ನಿಶ್ಚಯವಾಗಿಯೂ ಕಪಟ ವಿಶ್ವಾಸಿಗಳು ನರಕದ ಅತ್ಯಂತ ತಳಮಟ್ಟದಲ್ಲಿರುತ್ತಾರೆ. ನೀವು ಅವರಿಗೆ ಯಾವುದೇ ಸಹಾಯಕನನ್ನು ಕಾಣಲಾರಿರಿ.

إِنَّ ٱلۡمُنَٰفِقِينَ فِي ٱلدَّرۡكِ ٱلۡأَسۡفَلِ مِنَ ٱلنَّارِ وَلَن
تَجِدَ لَهُمۡ نَصِيرًا ١٤٥

146. ಆದರೆ ಪಶ್ಚಾತ್ತಾಪಪಡುವವರು, ಸುಧಾರಿಸಿಕೊಳ್ಳುವವರು, ಅಲ್ಲಾಹನನ್ನು ಬಿಗಿಯಾಗಿ ಹಿಡಿದುಕೊಳ್ಳುವವರು ಮತ್ತು ತಮ್ಮ ಧರ್ಮವನ್ನು ಅಲ್ಲಾಹನಿಗೆ ನಿಷ್ಕಳಂಕಗೊಳಿಸುವವರು ಇದರಿಂದ ಹೊರತಾಗಿದ್ದಾರೆ. ಅವರು ಸತ್ಯವಿಶ್ವಾಸಿಗಳಲ್ಲಿ ಸೇರಿದವರು. ಅಲ್ಲಾಹು ಸತ್ಯವಿಶ್ವಾಸಿಗಳಿಗೆ ಮಹಾ ಪ್ರತಿಫಲವನ್ನು ನೀಡುವನು.

إِلَّا ٱلَّذِينَ تَابُواْ وَأَصۡلَحُواْ وَٱعۡتَصَمُواْ بِٱللَّهِ
وَأَخۡلَصُواْ دِينَهُمۡ لِلَّهِ فَأُوْلَٰٓئِكَ مَعَ ٱلۡمُؤۡمِنِينَۖ
وَسَوۡفَ يُؤۡتِ ٱللَّهُ ٱلۡمُؤۡمِنِينَ أَجۡرًا عَظِيمٗا ١٤٦

[1] ಅಲ್ಲಾಹು ಅವರನ್ನು ವಂಚಿಸುತ್ತಿದ್ದಾನೆ ಎಂದರೆ ಅವರು ಮಾಡಿದ ವಂಚನೆಯ ಫಲವನ್ನು ಅವರೇ ಉಣ್ಣುವಂತೆ ಮಾಡುತ್ತಿದ್ದಾನೆ ಎಂದರ್ಥ.

**147.** ನೀವು ಕೃತಜ್ಞರಾಗಿ ಜೀವಿಸಿದರೆ ಮತ್ತು ಸತ್ಯವಿಶ್ವಾಸಿಗಳಾದರೆ, ನಿಮ್ಮನ್ನು ಶಿಕ್ಷಿಸಿ ಅಲ್ಲಾಹು ಮಾಡುವುದೇನು? ಅಲ್ಲಾಹು ಶ್ಲಾಘನಾರ್ಹನು ಮತ್ತು ಸರ್ವಜ್ಞನಾಗಿದ್ದಾನೆ.

مَّا يَفۡعَلُ ٱللَّهُ بِعَذَابِكُمۡ إِن شَكَرۡتُمۡ وَءَامَنتُمۡۚ
وَكَانَ ٱللَّهُ شَاكِرًا عَلِيمٗا ١٤٧

**148.** ಕೆಟ್ಟ ಪದಗಳನ್ನು ಜೋರಾಗಿ ಹೇಳುವುದನ್ನು ಅಲ್ಲಾಹು ಇಷ್ಟ-ಪಡುವುದಿಲ್ಲ. ಆದರೆ ಅನ್ಯಾಯಕ್ಕೆ ಗುರಿಯಾದವನು ಇದರಿಂದ ಹೊರತಾಗಿದ್ದಾನೆ. ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

لَّا يُحِبُّ ٱللَّهُ ٱلۡجَهۡرَ بِٱلسُّوٓءِ مِنَ ٱلۡقَوۡلِ إِلَّا مَن
ظُلِمَۚ وَكَانَ ٱللَّهُ سَمِيعًا عَلِيمًا ١٤٨

**149.** ನೀವು ಬಹಿರಂಗವಾಗಿ ಅಥವಾ ರಹಸ್ಯವಾಗಿ ಒಳಿತು ಮಾಡಿದರೂ, ಅಥವಾ ಒಂದು ದುಷ್ಕರ್ಮವನ್ನು ಕ್ಷಮಿಸಿದರೂ—ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ಸರ್ವಶಕ್ತನಾಗಿದ್ದಾನೆ.

إِن تُبۡدُواْ خَيۡرًا أَوۡ تُخۡفُوهُ أَوۡ تَعۡفُواْ عَن سُوٓءٖ
فَإِنَّ ٱللَّهَ كَانَ عَفُوّٗا قَدِيرًا ١٤٩

**150.** ನಿಶ್ಚಯವಾಗಿಯೂ ಅಲ್ಲಾಹನನ್ನು ಮತ್ತು ಅವನ ಸಂದೇಶ-ವಾಹಕರನ್ನು ನಿಷೇಧಿಸುವವರು, ಅಲ್ಲಾಹು ಮತ್ತು ಅವನ ಸಂದೇಶವಾಹಕರ ನಡುವೆ ಬೇಧ ಮಾಡಲು ಬಯಸುವವರು, ನಾವು ಕೆಲವರನ್ನು ನಂಬುತ್ತೇವೆ ಮತ್ತು ಕೆಲವರನ್ನು ನಿಷೇಧಿಸುತ್ತೇವೆ ಎಂದು ಹೇಳುವವರು ಹಾಗೂ ಅದರ ಮಧ್ಯೆ ಒಂದು ಮಾರ್ಗವನ್ನು ಸ್ವೀಕರಿಸಲು ಬಯಸುವವರು ಯಾರೋ,

إِنَّ ٱلَّذِينَ يَكۡفُرُونَ بِٱللَّهِ وَرُسُلِهِۦ وَيُرِيدُونَ
أَن يُفَرِّقُواْ بَيۡنَ ٱللَّهِ وَرُسُلِهِۦ وَيَقُولُونَ نُؤۡمِنُ
بِبَعۡضٖ وَنَكۡفُرُ بِبَعۡضٖ وَيُرِيدُونَ أَن يَتَّخِذُواْ
بَيۡنَ ذَٰلِكَ سَبِيلًا ١٥٠

**151.** ಅವರೇ ನಿಜವಾದ ಸತ್ಯನಿಷೇಧಿಗಳು. ಆ ಸತ್ಯನಿಷೇಧಿಗಳಿಗೆ ನಾವು ಅವಮಾನಕರ ಶಿಕ್ಷೆಯನ್ನು ಸಿದ್ಧಗೊಳಿಸಿದ್ದೇವೆ.

أُوْلَٰٓئِكَ هُمُ ٱلۡكَٰفِرُونَ حَقّٗاۚ وَأَعۡتَدۡنَا
لِلۡكَٰفِرِينَ عَذَابٗا مُّهِينٗا ١٥١

**152.** ಅಲ್ಲಾಹನಲ್ಲಿ ಮತ್ತು ಅವನ ಸಂದೇಶವಾಹಕರಲ್ಲಿ ವಿಶ್ವಾಸ-ವಿಡುವವರು, ಮತ್ತು ಅವರಲ್ಲಿ ಯಾರ ನಡುವೆಯೂ ಬೇಧ ಮಾಡದವರು ಯಾರೋ—ಅವರಿಗೆ ಅಲ್ಲಾಹು ಅರ್ಹ ಪ್ರತಿಫಲವನ್ನು ನೀಡುವನು. ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

وَٱلَّذِينَ ءَامَنُواْ بِٱللَّهِ وَرُسُلِهِۦ وَلَمۡ يُفَرِّقُواْ بَيۡنَ
أَحَدٖ مِّنۡهُمۡ أُوْلَٰٓئِكَ سَوۡفَ يُؤۡتِيهِمۡ أُجُورَهُمۡۚ
وَكَانَ ٱللَّهُ غَفُورٗا رَّحِيمٗا ١٥٢

**153.** ಗ್ರಂಥದವರು ನಿಮ್ಮೊಂದಿಗೆ—ಅವರಿಗೆ ಆಕಾಶದಿಂದ ಒಂದು ಗ್ರಂಥವನ್ನು ಇಳಿಸಿಕೊಡಬೇಕೆಂದು ಕೇಳುತ್ತಾರೆ. ಅವರು ಮೂಸಾರೊಡನೆ ಇದಕ್ಕಿಂತಲೂ ದೊಡ್ಡ ಸಂಗತಿಯನ್ನು ಕೇಳಿದ್ದರು. ಅವರು ಹೇಳಿದರು: "ನಮಗೆ ಅಲ್ಲಾಹನನ್ನು ಪ್ರತ್ಯಕ್ಷವಾಗಿ ತೋರಿಸಿಕೊಡಿ." ಆಗ ಅವರು ಮಾಡಿದ ಅನ್ಯಾಯದಿಂದಾಗಿ ಮಿಂಚು ಅವರ ಮೇಲೆರಗಿತು. ನಂತರ ಅವರಿಗೆ ಸ್ಪಷ್ಟ ಸಾಕ್ಷ್ಯಾಧಾರಗಳು ತಲುಪಿದ ಬಳಿಕವೂ ಅವರು

يَسۡـَٔلُكَ أَهۡلُ ٱلۡكِتَٰبِ أَن تُنَزِّلَ عَلَيۡهِمۡ
كِتَٰبٗا مِّنَ ٱلسَّمَآءِۚ فَقَدۡ سَأَلُواْ مُوسَىٰٓ أَكۡبَرَ
مِن ذَٰلِكَ فَقَالُوٓاْ أَرِنَا ٱللَّهَ جَهۡرَةٗ فَأَخَذَتۡهُمُ
ٱلصَّٰعِقَةُ بِظُلۡمِهِمۡۚ ثُمَّ ٱتَّخَذُواْ ٱلۡعِجۡلَ مِنۢ بَعۡدِ
مَا جَآءَتۡهُمُ ٱلۡبَيِّنَٰتُ فَعَفَوۡنَا عَن ذَٰلِكَۚ وَءَاتَيۡنَا
مُوسَىٰ سُلۡطَٰنٗا مُّبِينٗا ١٥٣

ಕರುವನ್ನು (ದೇವರನ್ನಾಗಿ) ಸ್ವೀಕರಿಸಿದರು. ಆದರೂ ನಾವು ಅದನ್ನು ಕ್ಷಮಿಸಿದೆವು. ಮೂಸಾರಿಗೆ ನಾವು ಸ್ಪಷ್ಟ ಸಾಕ್ಷ್ಯಾಧಾರಗಳನ್ನು ನೀಡಿದ್ದೆವು.

---

154. ಅವರಿಂದ ಕರಾರು ಪಡೆಯಲು ನಾವು ಅವರ ಮೇಲೆ ತೂರ್ ಪರ್ವತವನ್ನು ಎತ್ತಿಹಿಡಿದೆವು. ತಲೆಬಾಗುತ್ತಾ ದ್ವಾರವನ್ನು ಪ್ರವೇಶಿಸಿರಿ ಎಂದು ನಾವು ಅವರಿಗೆ ಆದೇಶಿಸಿದೆವು. ಸಬ್ಬತ್ ದಿನದಲ್ಲಿ ಅತಿರೇಕವೆಸಗಬೇಡಿ ಎಂದು ಅವರೊಡನೆ ಹೇಳಿದೆವು. ನಾವು ಅವರಿಂದ ಪ್ರಬಲ ಕರಾರನ್ನು ಪಡೆದೆವು.

وَرَفَعْنَا فَوْقَهُمُ ٱلطُّورَ بِمِيثَـٰقِهِمْ وَقُلْنَا لَهُمُ ٱدْخُلُوا۟ ٱلْبَابَ سُجَّدًا وَقُلْنَا لَهُمْ لَا تَعْدُوا۟ فِى ٱلسَّبْتِ وَأَخَذْنَا مِنْهُم مِّيثَـٰقًا غَلِيظًا ﴿١٥٤﴾

---

155. ಅವರು ಕರಾರನ್ನು ಉಲ್ಲಂಘಿಸಿದ, ಅಲ್ಲಾಹನ ವಚನಗಳನ್ನು ನಿಷೇಧಿಸಿದ, ಅನ್ಯಾಯವಾಗಿ ಪ್ರವಾದಿಗಳನ್ನು ಕೊಲೆ ಮಾಡಿದ ಮತ್ತು ತಮ್ಮ ಹೃದಯಗಳು ಮುಚ್ಚಿವೆಯೆಂದು ಹೇಳಿದ ಕಾರಣದಿಂದ (ಶಾಪಕ್ಕೆ ಗುರಿಯಾದರು). ಅಲ್ಲ, ವಾಸ್ತವವಾಗಿ ಅವರ ಸತ್ಯನಿಷೇಧದಿಂದಾಗಿ ಅಲ್ಲಾಹು ಅವರ ಹೃದಯಗಳಿಗೆ ಮೊಹರು ಹಾಕಿದ್ದಾನೆ. ಆದ್ದರಿಂದ ಅವರು ಸ್ವಲ್ಪ ಮಾತ್ರ ವಿಶ್ವಾಸವಿಡುತ್ತಾರೆ.

فَبِمَا نَقْضِهِم مِّيثَـٰقَهُمْ وَكُفْرِهِم بِـَٔايَـٰتِ ٱللَّهِ وَقَتْلِهِمُ ٱلْأَنۢبِيَآءَ بِغَيْرِ حَقٍّ وَقَوْلِهِمْ قُلُوبُنَا غُلْفٌۢ ۚ بَلْ طَبَعَ ٱللَّهُ عَلَيْهَا بِكُفْرِهِمْ فَلَا يُؤْمِنُونَ إِلَّا قَلِيلًا ﴿١٥٥﴾

---

156. ಅವರ ಸತ್ಯನಿಷೇಧದ ನಿಮಿತ್ತ ಮತ್ತು ಮರ್ಯಮರ ಮೇಲೆ ಗುರುತರ ಆರೋಪವನ್ನು ಹೊರಿಸಿದ ನಿಮಿತ್ತ (ಅವರು ಶಾಪಕ್ಕೆ ಗುರಿಯಾದರು).

وَبِكُفْرِهِمْ وَقَوْلِهِمْ عَلَىٰ مَرْيَمَ بُهْتَـٰنًا عَظِيمًا ﴿١٥٦﴾

---

157. “ಅಲ್ಲಾಹನ ಸಂದೇಶವಾಹಕರಾದ ಮರ್ಯಮರ ಪುತ್ರ ಮಸೀಹ ಈಸಾರನ್ನು ನಾವು ಕೊಂದಿದ್ದೇವೆ” ಎಂದು ಹೇಳಿದ ನಿಮಿತ್ತ (ಅವರು ಶಾಪಕ್ಕೆ ಗುರಿಯಾದರು). ಅವರು ಅವರನ್ನು ಕೊಲ್ಲಲಿಲ್ಲ ಮತ್ತು ಶಿಲುಬೆಗೇರಿಸಲೂ ಇಲ್ಲ. ವಾಸ್ತವವಾಗಿ, ಅವರಿಗೆ ಅದನ್ನು ಸಾದೃಶ್ಯಗೊಳಿಸಲಾಯಿತು. ನಿಶ್ಚಯವಾಗಿಯೂ ಅವರ (ಈಸಾರ) ವಿಷಯದಲ್ಲಿ ಭಿನ್ನಮತ ತಳೆದವರು ಅದರ ಬಗ್ಗೆ ಸಂಶಯದಲ್ಲಿದ್ದಾರೆ. ವದಂತಿಗಳನ್ನು ಹಿಂಬಾಲಿಸುವುದನ್ನು ಬಿಟ್ಟರೆ ಅವರಿಗೆ ಅದರ ಬಗ್ಗೆ ಸರಿಯಾದ ಜ್ಞಾನವೇ ಇಲ್ಲ. ನಿಶ್ಚಯವಾಗಿಯೂ ಅವರು ಈಸಾರನ್ನು ಕೊಲ್ಲಲಿಲ್ಲ.[1]

وَقَوْلِهِمْ إِنَّا قَتَلْنَا ٱلْمَسِيحَ عِيسَى ٱبْنَ مَرْيَمَ رَسُولَ ٱللَّهِ وَمَا قَتَلُوهُ وَمَا صَلَبُوهُ وَلَـٰكِن شُبِّهَ لَهُمْ ۚ وَإِنَّ ٱلَّذِينَ ٱخْتَلَفُوا۟ فِيهِ لَفِى شَكٍّ مِّنْهُ ۚ مَا لَهُم بِهِۦ مِنْ عِلْمٍ إِلَّا ٱتِّبَاعَ ٱلظَّنِّ ۚ وَمَا قَتَلُوهُ يَقِينًۢا ﴿١٥٧﴾

---

158. ಬದಲಿಗೆ, ಅಲ್ಲಾಹು ಅವರನ್ನು ತನ್ನ ಬಳಿಗೆ ಎತ್ತಿಕೊಂಡನು. ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

بَل رَّفَعَهُ ٱللَّهُ إِلَيْهِ ۚ وَكَانَ ٱللَّهُ عَزِيزًا حَكِيمًا ﴿١٥٨﴾

---

[1] ಯಹೂದಿಗಳು ಈಸಾ (ಯೇಸು) (ಅವರ ಮೇಲೆ ಶಾಂತಿಯಿರಲಿ) ರನ್ನು ಕೊಂದಿಲ್ಲ. ಶಿಲುಬೆಗೇರಿಸಿಯೂ ಇಲ್ಲ. ಬದಲಿಗೆ ಈಸಾ (ಅವರ ಮೇಲೆ ಶಾಂತಿಯಿರಲಿ) ರಂತೆಯೇ ಇದ್ದ ಒಬ್ಬ ವ್ಯಕ್ತಿಯನ್ನು ಅವರು ಈಸಾ ಎಂದು ಭಾವಿಸಿ ಶಿಲುಬೆಗೇರಿಸಿದರು.

159. ಅವರ (ಈಸಾರ) ಮರಣಕ್ಕೆ ಮೊದಲು ಅವರಲ್ಲಿ ವಿಶ್ವಾಸವಿ-ಡದವರು ಯಾರೂ ಗ್ರಂಥದವರಲ್ಲಿ ಇರಲಾರರು. ಪುನರುತ್ಥಾನ ದಿನದಂದು ಅವರು ಇವರಿಗೆ ವಿರುದ್ಧವಾಗಿ ಸಾಕ್ಷಿ ನುಡಿಯುವರು.

وَإِن مِّنۡ أَهۡلِ ٱلۡكِتَٰبِ إِلَّا لَيُؤۡمِنَنَّ بِهِۦ قَبۡلَ مَوۡتِهِۦۖ وَيَوۡمَ ٱلۡقِيَٰمَةِ يَكُونُ عَلَيۡهِمۡ شَهِيدٗا ١٥٩

160. ಯಹೂದಿಗಳು ಮಾಡಿದ ಅನ್ಯಾಯದ ನಿಮಿತ್ತ ಮತ್ತು ಅಲ್ಲಾಹನ ಮಾರ್ಗದಿಂದ ಅವರು ಹೇರಳವಾಗಿ ಜನರನ್ನು ತಡೆಗಟ್ಟಿದ ನಿಮಿತ್ತ ಅವರಿಗೆ ಅನುಮತಿಸಲಾಗಿದ್ದ ಹಲವಾರು ಉತ್ತಮ ವಸ್ತುಗಳನ್ನು ನಾವು ಅವರಿಗೆ ನಿಷೇಧಿಸಿದೆವು.

فَبِظُلۡمٖ مِّنَ ٱلَّذِينَ هَادُواْ حَرَّمۡنَا عَلَيۡهِمۡ طَيِّبَٰتٍ أُحِلَّتۡ لَهُمۡ وَبِصَدِّهِمۡ عَن سَبِيلِ ٱللَّهِ كَثِيرٗا ١٦٠

161. ಅವರಿಗೆ ಬಡ್ಡಿಯನ್ನು ವಿರೋಧಿಸಲಾಗಿದ್ದೂ ಸಹ ಅವರು ಅದನ್ನು ಪಡೆದ ನಿಮಿತ್ತ ಮತ್ತು ಜನರ ಧನವನ್ನು ಅನ್ಯಾಯವಾಗಿ ತಿಂದ ನಿಮಿತ್ತ. ಅವರಲ್ಲಿರುವ ಸತ್ಯನಿಷೇಧಿಗಳಿಗೆ ನಾವು ಯಾತನಾಮಯ ಶಿಕ್ಷೆಯನ್ನು ಸಿದ್ಧಗೊಳಿಸಿದ್ದೇವೆ.

وَأَخۡذِهِمُ ٱلرِّبَوٰاْ وَقَدۡ نُهُواْ عَنۡهُ وَأَكۡلِهِمۡ أَمۡوَٰلَ ٱلنَّاسِ بِٱلۡبَٰطِلِۚ وَأَعۡتَدۡنَا لِلۡكَٰفِرِينَ مِنۡهُمۡ عَذَابًا أَلِيمٗا ١٦١

162. ಆದರೆ ಅವರಲ್ಲಿರುವ ಮಹಾಜ್ಞಾನಿಗಳು ಮತ್ತು ಸತ್ಯವಿಶ್ವಾಸಿಗಳು ನಿಮಗೆ ಅವತೀರ್ಣವಾದ ಗ್ರಂಥದಲ್ಲಿ ಮತ್ತು ನಿಮಗಿಂತ ಮೊದಲು ಅವತೀರ್ಣವಾದ ಗ್ರಂಥಗಳಲ್ಲಿ ವಿಶ್ವಾಸವಿಡುತ್ತಾರೆ. ಅವರು ನಮಾಝ್ ಸಂಸ್ಥಾಪಿಸುತ್ತಾರೆ, ಝಕಾತ್ ನೀಡುತ್ತಾರೆ ಮತ್ತು ಅಲ್ಲಾಹನಲ್ಲಿ ಹಾಗೂ ಅಂತ್ಯದಿನದಲ್ಲಿ ವಿಶ್ವಾಸವಿಡುತ್ತಾರೆ. ನಾವು ಅವರಿಗೆ ಮಹಾ ಪ್ರತಿಫಲವನ್ನು ದಯಪಾಲಿಸುವೆವು.

لَّٰكِنِ ٱلرَّٰسِخُونَ فِي ٱلۡعِلۡمِ مِنۡهُمۡ وَٱلۡمُؤۡمِنُونَ يُؤۡمِنُونَ بِمَآ أُنزِلَ إِلَيۡكَ وَمَآ أُنزِلَ مِن قَبۡلِكَۚ وَٱلۡمُقِيمِينَ ٱلصَّلَوٰةَۚ وَٱلۡمُؤۡتُونَ ٱلزَّكَوٰةَ وَٱلۡمُؤۡمِنُونَ بِٱللَّهِ وَٱلۡيَوۡمِ ٱلۡأٓخِرِ أُوْلَٰٓئِكَ سَنُؤۡتِيهِمۡ أَجۡرًا عَظِيمًا ١٦٢

163. ನೂಹ್ ಮತ್ತು ಅವರ ನಂತರದ ಪ್ರವಾದಿಗಳಿಗೆ ದೇವವಾಣಿ ನೀಡಿದಂತೆಯೇ ನಾವು ನಿಮಗೂ ದೇವವಾಣಿ ನೀಡಿದ್ದೇವೆ. ಇಬ್ರಾಹೀಮ್, ಇಸ್ಮಾಈಲ್, ಇಸ್‌ಹಾಕ್, ಯಾಕೂಬ್, ಯಾಕೂಬ್ ಸಂತತಿಗಳು, ಈಸಾ, ಅಯ್ಯೂಬ್, ಯೂನುಸ್, ಹಾರೂನ್, ಸುಲೈಮಾನ್ ಮುಂತಾದವರಿಗೂ ನಾವು ದೇವವಾಣಿಯನ್ನು ನೀಡಿದ್ದೇವೆ. ನಾವು ದಾವೂದರಿಗೆ ಝಬೂರನ್ನು ನೀಡಿದ್ದೇವೆ.

۞إِنَّآ أَوۡحَيۡنَآ إِلَيۡكَ كَمَآ أَوۡحَيۡنَآ إِلَىٰ نُوحٖ وَٱلنَّبِيِّـۧنَ مِنۢ بَعۡدِهِۦۚ وَأَوۡحَيۡنَآ إِلَىٰٓ إِبۡرَٰهِيمَ وَإِسۡمَٰعِيلَ وَإِسۡحَٰقَ وَيَعۡقُوبَ وَٱلۡأَسۡبَاطِ وَعِيسَىٰ وَأَيُّوبَ وَيُونُسَ وَهَٰرُونَ وَسُلَيۡمَٰنَۚ وَءَاتَيۡنَا دَاوُۥدَ زَبُورٗا ١٦٣

164. ನಾವು ಈಗಾಗಲೇ ನಿಮಗೆ ತಿಳಿಸಿಕೊಟ್ಟ ಸಂದೇಶವಾಹಕರನ್ನು ಮತ್ತು ನಾವು ನಿಮಗೆ ತಿಳಿಸಿಕೊಡದ ಸಂದೇಶವಾಹಕರನ್ನು (ನಾವು ಕಳುಹಿಸಿದ್ದೇವೆ). ಅಲ್ಲಾಹು ಮೂಸಾರೊಡನೆ ನೇರವಾಗಿ ಮಾತನಾಡಿದ್ದಾನೆ.

وَرُسُلٗا قَدۡ قَصَصۡنَٰهُمۡ عَلَيۡكَ مِن قَبۡلُ وَرُسُلٗا لَّمۡ نَقۡصُصۡهُمۡ عَلَيۡكَۚ وَكَلَّمَ ٱللَّهُ مُوسَىٰ تَكۡلِيمٗا ١٦٤

165. ಸುವಾರ್ತೆ ತಿಳಿಸುವ ಮತ್ತು ಮುನ್ನೆಚ್ಚರಿಕೆ ನೀಡುವ ಸಂದೇಶ-ವಾಹಕರನ್ನು (ನಾವು ಕಳುಹಿಸಿದ್ದೇವೆ). ಸಂದೇಶವಾಹಕರನ್ನು ಕಳುಹಿಸಿದ ನಂತರ ಅಲ್ಲಾಹನಿಗೆದುರಾಗಿ ಜನರಿಗೆ ಯಾವುದೇ ಸಾಕ್ಷ್ಯಾಧಾರಗಳು ಇಲ್ಲದಿರುವುದಕ್ಕಾಗಿ. ಅಲ್ಲಾಹು ಪ್ರಬಲನು

رُّسُلٗا مُّبَشِّرِينَ وَمُنذِرِينَ لِئَلَّا يَكُونَ لِلنَّاسِ عَلَى ٱللَّهِ حُجَّةُۢ بَعۡدَ ٱلرُّسُلِۚ وَكَانَ ٱللَّهُ عَزِيزًا حَكِيمٗا ١٦٥

ಮತ್ತು ವಿವೇಕಪೂರ್ಣನಾಗಿದ್ದಾನೆ.

166. ಆದರೆ ನಿಮಗೆ ಅವತೀರ್ಣಗೊಳಿಸಿದ ಸಂದೇಶಕ್ಕೆ ಅಲ್ಲಾಹು ಸಾಕ್ಷಿಯಾಗಿದ್ದಾನೆ. ಅವನು ಅದನ್ನು ಪೂರ್ಣ ತಿಳುವಳಿಕೆಯೊಂದಿಗೆ ಅವತೀರ್ಣಗೊಳಿಸಿದ್ದಾನೆ. ದೇವದೂತರುಗಳು ಕೂಡ ಅದಕ್ಕೆ ಸಾಕ್ಷಿಯಾಗಿದ್ದಾರೆ. ಸಾಕ್ಷಿಯಾಗಿ ಅಲ್ಲಾಹು ಸಾಕು.

لَّٰكِنِ ٱللَّهُ يَشۡهَدُ بِمَآ أَنزَلَ إِلَيۡكَۖ أَنزَلَهُۥ بِعِلۡمِهِۦۖ وَٱلۡمَلَٰٓئِكَةُ يَشۡهَدُونَۚ وَكَفَىٰ بِٱللَّهِ شَهِيدًا ١٦٦

167. ಸತ್ಯನಿಷೇಧಿಗಳು ಮತ್ತು ಅಲ್ಲಾಹನ ಮಾರ್ಗದಿಂದ ಜನರನ್ನು ತಡೆದವರು ಯಾರೋ—ನಿಶ್ಚಯವಾಗಿಯೂ ಅವರು ವಿದೂರ ದುರ್ಮಾರ್ಗದಲ್ಲಿ ದಾರಿತಪ್ಪಿದ್ದಾರೆ.

إِنَّ ٱلَّذِينَ كَفَرُواْ وَصَدُّواْ عَن سَبِيلِ ٱللَّهِ قَدۡ ضَلُّواْ ضَلَٰلَۢا بَعِيدًا ١٦٧

168. ಸತ್ಯನಿಷೇಧಿಗಳು ಮತ್ತು ಅಕ್ರಮವೆಸಗಿದವರು ಯಾರೋ—ಅವರನ್ನು ಅಲ್ಲಾಹು ಎಂದಿಗೂ ಕ್ಷಮಿಸುವುದಿಲ್ಲ ಮತ್ತು ಅವರಿಗೆ ಯಾವುದೇ ಮಾರ್ಗವನ್ನು ತೋರಿಸುವುದಿಲ್ಲ.

إِنَّ ٱلَّذِينَ كَفَرُواْ وَظَلَمُواْ لَمۡ يَكُنِ ٱللَّهُ لِيَغۡفِرَ لَهُمۡ وَلَا لِيَهۡدِيَهُمۡ طَرِيقًا ١٦٨

169. ನರಕದ ಮಾರ್ಗವನ್ನು ಬಿಟ್ಟು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅದು ಅಲ್ಲಾಹನಿಗೆ ಬಹಳ ಸುಲಭವಾಗಿದೆ.

إِلَّا طَرِيقَ جَهَنَّمَ خَٰلِدِينَ فِيهَآ أَبَدٗاۚ وَكَانَ ذَٰلِكَ عَلَى ٱللَّهِ يَسِيرٗا ١٦٩

170. ಓ ಜನರೇ! ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯಿಂದ ನಿಮ್ಮ ಬಳಿಗೆ ಸಂದೇಶವಾಹಕರು ಸತ್ಯಸಹಿತ ಬಂದಿದ್ದಾರೆ. ಆದ್ದರಿಂದ ಅವರಲ್ಲಿ ವಿಶ್ವಾಸವಿಡಿ. ಅದು ನಿಮಗೆ ಒಳಿತಾಗಿದೆ. ನೀವು ನಿಷೇಧಿಸಿದರೆ (ಅದರಿಂದ ಅಲ್ಲಾಹನಿಗೇನೂ ನಷ್ಟವಿಲ್ಲ). ಭೂಮ್ಯಾಕಾಶಗಳಲ್ಲಿರುವುದೆಲ್ಲವೂ ಅಲ್ಲಾಹನಿಗೆ ಸೇರಿದ್ದು. ಅಲ್ಲಾಹು ಎಲ್ಲವನ್ನು ತಿಳಿದವನು ಮತ್ತು ವಿವೇಕಪೂರ್ಣನಾಗಿದ್ದಾನೆ.

يَٰٓأَيُّهَا ٱلنَّاسُ قَدۡ جَآءَكُمُ ٱلرَّسُولُ بِٱلۡحَقِّ مِن رَّبِّكُمۡ فَـَٔامِنُواْ خَيۡرٗا لَّكُمۡۚ وَإِن تَكۡفُرُواْ فَإِنَّ لِلَّهِ مَا فِي ٱلسَّمَٰوَٰتِ وَٱلۡأَرۡضِۚ وَكَانَ ٱللَّهُ عَلِيمًا حَكِيمٗا ١٧٠

171. ಓ ಗ್ರಂಥದವರೇ! ನೀವು ನಿಮ್ಮ ಧರ್ಮದಲ್ಲಿ ಹದ್ದುಮೀರಿ ವರ್ತಿಸಬೇಡಿ. ಅಲ್ಲಾಹನ ಬಗ್ಗೆ ಸತ್ಯವನ್ನಲ್ಲದೆ ಬೇರೇನನ್ನೂ ಹೇಳಬೇಡಿ. ಮರ್ಯಮರ ಮಗ ಮಸೀಹ ಈಸಾ ಅಲ್ಲಾಹನ ಸಂದೇಶವಾಹಕರು, ಮರ್ಯಮರಿಗೆ ಅವನು ಹಾಕಿಕೊಟ್ಟ ಅವನ ವಚನ ಮತ್ತು ಅವನ ಕಡೆಯ ಒಂದು ಆತ್ಮವಾಗಿದ್ದಾರೆ. ಆದ್ದರಿಂದ ಅಲ್ಲಾಹನಲ್ಲಿ ಮತ್ತು ಅವನ ಸಂದೇಶವಾಹಕರು- ಗಳಲ್ಲಿ ವಿಶ್ವಾಸವಿಡಿರಿ. ಮೂರು ಎಂದು ಹೇಳಬೇಡಿ.[1] ಹಾಗೆ ಹೇಳುವುದನ್ನು ನಿಲ್ಲಿಸಿದರೆ ನಿಮಗೇ ಒಳ್ಳೆಯದು. ಅಲ್ಲಾಹು ಏಕೈಕ

يَٰٓأَهۡلَ ٱلۡكِتَٰبِ لَا تَغۡلُواْ فِي دِينِكُمۡ وَلَا تَقُولُواْ عَلَى ٱللَّهِ إِلَّا ٱلۡحَقَّۚ إِنَّمَا ٱلۡمَسِيحُ عِيسَى ٱبۡنُ مَرۡيَمَ رَسُولُ ٱللَّهِ وَكَلِمَتُهُۥٓ أَلۡقَىٰهَآ إِلَىٰ مَرۡيَمَ وَرُوحٞ مِّنۡهُۖ فَـَٔامِنُواْ بِٱللَّهِ وَرُسُلِهِۦۖ وَلَا تَقُولُواْ ثَلَٰثَةٌۚ ٱنتَهُواْ خَيۡرٗا لَّكُمۡۚ إِنَّمَا ٱللَّهُ إِلَٰهٞ وَٰحِدٞۖ سُبۡحَٰنَهُۥٓ أَن يَكُونَ لَهُۥ وَلَدٞۘ لَّهُۥ

[1] ಕ್ರೈಸ್ತರು ತಿಯೇಕತ್ವದಲ್ಲಿ ನಂಬಿಕೆಯಿಡುತ್ತಾರೆ. ತ್ರಿಯೇಕತ್ವ ಎಂದರೆ ತಂದೆ, ಮಗ ಮತ್ತು ಪವಿತ್ರಾತ್ಮ—ಇವರು ಮೂವರೂ ಒಂದೇ ಮತ್ತು ಇವರು ಮೂವರೂ ದೇವರುಗಳು ಎಂಬ ನಂಬಿಕೆ.

ದೇವನಾಗಿದ್ದಾನೆ. ಮಕ್ಕಳು ಉಂಟಾಗುತ್ತಾರೆ ಎಂಬುದರಿಂದ ಅವನು ಎಷ್ಟೋ ಪರಿಶುದ್ಧನಾಗಿದ್ದಾನೆ. ಭೂಮ್ಯಾಕಾಶಗಳಲ್ಲಿ-ರುವುದೆಲ್ಲವೂ ಅವನಿಗೆ ಸೇರಿದ್ದು. ಕಾರ್ಯನಿರ್ವಾಹಕನಾಗಿ ಅಲ್ಲಾಹು ಸಾಕು.

مَا فِي ٱلسَّمَٰوَٰتِ وَمَا فِي ٱلْأَرْضِۗ وَكَفَىٰ بِٱللَّهِ
وَكِيلٗا ١٧١

---

172. ಅಲ್ಲಾಹನ ದಾಸನಾಗಿರಲು ಮಸೀಹರಿಗೆ ಯಾವುದೇ ತಿರಸ್ಕಾರವಿಲ್ಲ. (ಅಲ್ಲಾಹನ) ಸಾಮೀಪ್ಯವನ್ನು ಗಳಿಸಿದ ದೇವದೂತರುಗಳಿಗೂ ತಿರಸ್ಕಾರವಿಲ್ಲ.ಅಲ್ಲಾಹನನ್ನು ಆರಾಧಿಸಲು ತಿರಸ್ಕಾರ ಮಾಡುವವರು ಮತ್ತು ಅಹಂಕಾರಪ-ಡುವವರು ಯಾರೋ—ಅವರೆಲ್ಲರನ್ನೂ ಅವನು ತನ್ನ ಬಳಿಗೆ ಒಟ್ಟುಗೂಡಿಸುವನು.

لَّن يَسْتَنكِفَ ٱلْمَسِيحُ أَن يَكُونَ عَبْدٗا
لِّلَّهِ وَلَا ٱلْمَلَٰٓئِكَةُ ٱلْمُقَرَّبُونَۚ وَمَن يَسْتَنكِفْ
عَنْ عِبَادَتِهِۦ وَيَسْتَكْبِرْ فَسَيَحْشُرُهُمْ إِلَيْهِ
جَمِيعٗا ١٧٢

---

173. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ—ಅವರ ಪ್ರತಿಫಲವನ್ನು ಅವನು ಅವರಿಗೆ ಪೂರ್ಣವಾಗಿ ನೀಡುವನು ಮತ್ತು ತನ್ನ ಅನುಗ್ರಹದಿಂದ ಅವರಿಗೆ ಹೆಚ್ಚುವರಿಯನ್ನು ದಯಪಾಲಿಸುವನು. ಆದರೆ ತಿರಸ್ಕಾರ ಮಾಡುವವರು ಮತ್ತು ಅಹಂಕಾರಪಡುವವರು ಯಾರೋ—ಅವರಿಗೆ ಅವನು ಯಾತನಾಮಯ ಶಿಕ್ಷೆಯನ್ನು ನೀಡುವನು. ಅವರು ಅಲ್ಲಾಹನ ಹೊರತು ಯಾವುದೇ ರಕ್ಷಕನನ್ನು ಅಥವಾ ಸಹಾಯಕನನ್ನು ಕಾಣಲಾರರು.

فَأَمَّا ٱلَّذِينَ ءَامَنُواْ وَعَمِلُواْ ٱلصَّٰلِحَٰتِ
فَيُوَفِّيهِمْ أُجُورَهُمْ وَيَزِيدُهُم مِّن فَضْلِهِۦۖ وَأَمَّا
ٱلَّذِينَ ٱسْتَنكَفُواْ وَٱسْتَكْبَرُواْ فَيُعَذِّبُهُمْ عَذَابًا
أَلِيمٗا وَلَا يَجِدُونَ لَهُم مِّن دُونِ ٱللَّهِ وَلِيّٗا وَلَا
نَصِيرٗا ١٧٣

---

174. ಓ ಮನುಷ್ಯರೇ! ನಿಶ್ಚಯವಾಗಿಯೂ ನಿಮಗೆ ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಸ್ಪಷ್ಟವಾದ ಸಾಕ್ಷ್ಯವು ಬಂದಿದೆ. ನಾವು ನಿಮಗೆ ಸ್ಪಷ್ಟ ಬೆಳಕನ್ನು ಇಳಿಸಿಕೊಟ್ಟಿದ್ದೇವೆ.

يَٰٓأَيُّهَا ٱلنَّاسُ قَدْ جَآءَكُم بُرْهَٰنٞ مِّن
رَّبِّكُمْ وَأَنزَلْنَآ إِلَيْكُمْ نُورٗا مُّبِينٗا ١٧٤

---

175. ಅಲ್ಲಾಹನಲ್ಲಿ ವಿಶ್ವಾಸವಿಟ್ಟು ಅವನನ್ನು ಬಿಗಿಯಾಗಿ ಹಿಡಿದು-ಕೊಳ್ಳುವವರು ಯಾರೋ—ಅವರನ್ನು ಅವನು ತನ್ನ ದಯೆ ಮತ್ತು ಅನುಗ್ರಹದಲ್ಲಿ ಸೇರಿಸುವನು. ಅವರನ್ನು ತನ್ನ ಬಳಿಗೆ ನೇರಮಾರ್ಗದಲ್ಲಿ ಮುನ್ನಡೆಸುವನು.

فَأَمَّا ٱلَّذِينَ ءَامَنُواْ بِٱللَّهِ وَٱعْتَصَمُواْ بِهِۦ
فَسَيُدْخِلُهُمْ فِي رَحْمَةٖ مِّنْهُ وَفَضْلٖ وَيَهْدِيهِمْ
إِلَيْهِ صِرَٰطٗا مُّسْتَقِيمٗا ١٧٥

---

176. ಅವರು ತಮ್ಮೊಂದಿಗೆ ಧರ್ಮವಿಧಿಯನ್ನು ಕೇಳುತ್ತಾರೆ. ಹೇಳಿರಿ: "ತಂದೆ-ತಾಯಿ ಮತ್ತು ಮಕ್ಕಳಿಲ್ಲದವರ ಬಗ್ಗೆ ಅಲ್ಲಾಹು ನಿಮಗೆ ಧರ್ಮವಿಧಿಯನ್ನು ನೀಡುತ್ತಾನೆ."[1] ಒಬ್ಬ ವ್ಯಕ್ತಿ ಸಾಯುವಾಗ ಸಂತಾನರಹಿತನಾಗಿದ್ದು ಅವನಿಗೆ ಒಬ್ಬ ಸಹೋದರಿ ಮಾತ್ರವಿದ್ದರೆ ಅವನು ಬಿಟ್ಟು ಹೋದ ಆಸ್ತಿಯಲ್ಲಿ ಅರ್ಧ ಭಾಗ ಅವಳಿಗೆ ದೊರೆಯುತ್ತದೆ. ಅವಳು ಸಂತಾನರಹಿತೆಯಾಗಿದ್ದು

يَسْتَفْتُونَكَ قُلِ ٱللَّهُ يُفْتِيكُمْ فِي ٱلْكَلَٰلَةِۚ إِنِ
ٱمْرُؤٌاْ هَلَكَ لَيْسَ لَهُۥ وَلَدٞ وَلَهُۥٓ أُخْتٞ فَلَهَا
نِصْفُ مَا تَرَكَۚ وَهُوَ يَرِثُهَآ إِن لَّمْ يَكُن لَّهَا
وَلَدٞۚ فَإِن كَانَتَا ٱثْنَتَيْنِ فَلَهُمَا ٱلثُّلُثَانِ مِمَّا تَرَكَۚ
وَإِن كَانُوٓاْ إِخْوَةٗ رِّجَالٗا وَنِسَآءٗ فَلِلذَّكَرِ مِثْلُ

[1] ಮೃತ ವ್ಯಕ್ತಿಗೆ ತಂದೆ-ತಾಯಿ ಮತ್ತು ಮಕ್ಕಳಿಲ್ಲದಿದ್ದರೆ ಅವನ ಆಸ್ತಿಯನ್ನು ಹೇಗೆ ಪಾಲು ಮಾಡಬೇಕೆಂದು ಈ ವಚನವು ವಿವರಿಸುತ್ತದೆ.

حَظِّ ٱلۡأُنثَيَيۡنِۗ يُبَيِّنُ ٱللَّهُ لَكُمۡ أَن تَضِلُّواْۗ وَٱللَّهُ بِكُلِّ شَيۡءٍ عَلِيمُۢ ﴿١٧٦﴾

ಮರಣಹೊಂದಿದರೆ, ಅವಳ ಪೂರ್ಣ ಆಸ್ತಿಗೆ ಇವನು ವಾರಸುದಾರನಾಗುತ್ತಾನೆ. ಅವನಿಗೆ ಇಬ್ಬರು ಸಹೋದರಿಯರಿದ್ದರೆ ಅವನು ಬಿಟ್ಟು ಹೋದ ಆಸ್ತಿಯ ಮೂರನೇ ಎರಡು ಭಾಗವು ಅವರಿಗೆ ದೊರೆಯುತ್ತದೆ. ಅವನಿಗೆ ಅನೇಕ ಸಹೋದರ-ಸಹೋದರಿಯರಿದ್ದರೆ ಒಬ್ಬ ಪುರುಷನ ಪಾಲು ಇಬ್ಬರು ಮಹಿಳೆಯರ ಪಾಲಿಗೆ ಸಮಾನವಾಗಿದೆ. ನೀವು ದಾರಿತಪ್ಪದಿರಲು ಅಲ್ಲಾಹು ನಿಮಗೆ ವಿಷಯಗಳನ್ನು ಸ್ಪಷ್ಟಗೊಳಿಸುತ್ತಿದ್ದಾನೆ. ಅಲ್ಲಾಹು ಎಲ್ಲಾ ವಿಷಯಗಳನ್ನೂ ತಿಳಿದವನಾಗಿದ್ದಾನೆ.

# 5. ಅಲ್-ಮಾಇದ

بِسۡمِ ٱللَّهِ ٱلرَّحۡمَٰنِ ٱلرَّحِيمِ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

يَٰٓأَيُّهَا ٱلَّذِينَ ءَامَنُوٓاْ أَوۡفُواْ بِٱلۡعُقُودِۚ أُحِلَّتۡ لَكُم بَهِيمَةُ ٱلۡأَنۡعَٰمِ إِلَّا مَا يُتۡلَىٰ عَلَيۡكُمۡ غَيۡرَ مُحِلِّي ٱلصَّيۡدِ وَأَنتُمۡ حُرُمٌۗ إِنَّ ٱللَّهَ يَحۡكُمُ مَا يُرِيدُ ﴿١﴾

1. ಓ ಸತ್ಯವಿಶ್ವಾಸಿಗಳೇ! ಕರಾರುಗಳನ್ನು ನೆರವೇರಿಸಿರಿ. ನಿಮಗೆ ಓದಿಕೊಡಲಾಗುವ ಪ್ರಾಣಿಗಳ ಹೊರತಾದ ಮೇಯುವ ಜಾನುವಾರುಗಳನ್ನು ನಿಮಗೆ ಅನುಮತಿಸಲಾಗಿದೆ. ಆದರೆ ನೀವು ಇಹ್ರಾಮ್‌ನಲ್ಲಿರುವಾಗ[1] ಬೇಟೆಯಾಡುವುದಕ್ಕೆ ಅನುಮತಿಯಿಲ್ಲ. ನಿಶ್ಚಯವಾಗಿಯೂ ಅಲ್ಲಾಹು ಅವನು ಬಯಸುವುದನ್ನು ಆದೇಶಿಸುತ್ತಾನೆ.

يَٰٓأَيُّهَا ٱلَّذِينَ ءَامَنُواْ لَا تُحِلُّواْ شَعَٰٓئِرَ ٱللَّهِ وَلَا ٱلشَّهۡرَ ٱلۡحَرَامَ وَلَا ٱلۡهَدۡيَ وَلَا ٱلۡقَلَٰٓئِدَ وَلَآ ءَآمِّينَ ٱلۡبَيۡتَ ٱلۡحَرَامَ يَبۡتَغُونَ فَضۡلٗا مِّن رَّبِّهِمۡ وَرِضۡوَٰنٗاۚ وَإِذَا حَلَلۡتُمۡ فَٱصۡطَادُواْۚ وَلَا يَجۡرِمَنَّكُمۡ شَنَـَٔانُ قَوۡمٍ أَن صَدُّوكُمۡ عَنِ ٱلۡمَسۡجِدِ ٱلۡحَرَامِ أَن تَعۡتَدُواْۘ وَتَعَاوَنُواْ عَلَى ٱلۡبِرِّ وَٱلتَّقۡوَىٰۖ وَلَا تَعَاوَنُواْ عَلَى ٱلۡإِثۡمِ وَٱلۡعُدۡوَٰنِۚ وَٱتَّقُواْ ٱللَّهَۖ إِنَّ ٱللَّهَ شَدِيدُ ٱلۡعِقَابِ ﴿٢﴾

2. ಓ ಸತ್ಯವಿಶ್ವಾಸಿಗಳೇ! ಅಲ್ಲಾಹನ ಲಾಂಛನಗಳಿಗೆ ಅಗೌರವ ತೋರಬೇಡಿ. ಪವಿತ್ರ ತಿಂಗಳಿಗೆ, ಬಲಿಮೃಗಗಳಿಗೆ, (ಅವುಗಳ ಕೊರಳಲ್ಲಿರುವ) ಪದಕಗಳಿಗೆ, ಮತ್ತು ತಮ್ಮ ಪರಿಪಾಲಕನ (ಅಲ್ಲಾಹನ) ಔದಾರ್ಯ ಹಾಗೂ ಸಂಪ್ರೀತಿಯನ್ನು ಹುಡುಕುತ್ತಾ ಪವಿತ್ರ ಭವನಕ್ಕೆ ತೀರ್ಥಯಾತ್ರೆ ಮಾಡುವವರಿಗೆ (ಅಗೌರವ ತೋರಬೇಡಿ). ನೀವು ಇಹ್ರಾಮ್‌ನಿಂದ ಮುಕ್ತರಾದರೆ ಬೇಟೆಯಾಡಿರಿ. ಮಸ್ಜಿದುಲ್ ಹರಾಮ್‌ನಿಂದ ನಿಮ್ಮನ್ನು ತಡೆದರು ಎಂಬ ಕಾರಣದಿಂದ ಕೆಲವು ಜನರೊಡನೆ ನಿಮಗಿರುವ ದ್ವೇಷವು ಅತಿರೇಕವೆಸಗುವಂತೆ ನಿಮ್ಮನ್ನು ಪ್ರೇರೇಪಿಸದಿರಲಿ. ಒಳಿತು ಮತ್ತು ದೇವಭಯದಲ್ಲಿ ಪರಸ್ಪರ ಸಹಕರಿಸಿರಿ. ಪಾಪ ಮತ್ತು ಅತಿರೇಕದಲ್ಲಿ ಪರಸ್ಪರ ಸಹಕರಿಸಬೇಡಿ. ಅಲ್ಲಾಹನನ್ನು ಭಯಪಡಿರಿ. ನಿಶ್ಚಯವಾಗಿಯೂ ಅಲ್ಲಾಹು ಕಠೋರವಾಗಿ ಶಿಕ್ಷಿಸುವವನಾಗಿದ್ದಾನೆ.

[1] ಹಜ್ಜ್ ಅಥವಾ ಉಮ್ರ ನಿರ್ವಹಿಸುತ್ತೇನೆ ಎಂಬ ಉದ್ದೇಶದಿಂದ (ನಿಯ್ಯತ್‌ನಿಂದ) ಸಾಂಕೇತಿಕವಾಗಿ ಹಜ್ ಅಥವಾ ಉಮ್ರ ಕರ್ಮದಲ್ಲಿ ಪ್ರವೇಶಿಸುವುದಕ್ಕೆ 'ಇಹ್ರಾಮ್' ಎಂದು ಹೇಳಲಾಗುತ್ತದೆ.

3. ಶವ, ರಕ್ತ, ಹಂದಿ ಮಾಂಸ ಮತ್ತು ಅಲ್ಲಾಹೇತರರಿಗೆ ಕೊಯ್ಯಲಾದವುಗಳನ್ನು ನಿಮಗೆ ನಿಷೇಧಿಸಲಾಗಿದೆ. ಹಾಗೆಯೇ, ಕತ್ತು ಹಿಸುಕಿ ಸಾಯಿಸಲಾದ, ಬಲವಾದ ಪ್ರಹಾರದಿಂದ ಸತ್ತ, ಎತ್ತರದಿಂದ ಬಿದ್ದು ಸತ್ತ, ಕೊಂಬಿನಿಂದ ತಿವಿತಕ್ಕೊಳಗಾಗಿ ಸತ್ತ, ಕಾಡುಪ್ರಾಣಿಗಳು ಹರಿದು ತಿಂದ ಪ್ರಾಣಿಗಳನ್ನು ನಿಮಗೆ ನಿಷೇಧಿಸಲಾಗಿದೆ. ಆದರೆ (ಸಾಯುವ ಮೊದಲೇ) ನೀವು ಕತ್ತು ಕೊಯ್ದು (ದಿಬ್ಹ ಮಾಡಿದ) ಪ್ರಾಣಿಗಳನ್ನು ಇದರಿಂದ ಹೊರತುಪಡಿಸಲಾಗಿದೆ. ಅದೇ ರೀತಿ, ವಿಗ್ರಹಗಳ ಮುಂದೆ ಬಲಿ ನೀಡಲಾದ ಪ್ರಾಣಿಗಳನ್ನು ಮತ್ತು ಬಾಣಗಳನ್ನು ಬಳಸಿ ಅದೃಷ್ಟ ಪರೀಕ್ಷಿಸುವುದನ್ನು (ನಿಮಗೆ ನಿಷೇಧಿಸಲಾಗಿದೆ). ಇವೆಲ್ಲವೂ ಕೆಟ್ಟ ಪಾಪಗಳಾಗಿವೆ. ಇಂದು ಸತ್ಯನಿಷೇಧಿಗಳು ನಿಮ್ಮ ಧರ್ಮದ ಬಗ್ಗೆ ಹತಾಶರಾಗಿದ್ದಾರೆ. ಆದ್ದರಿಂದ ನೀವು ಅವರನ್ನು ಭಯಪಡಬೇಡಿ. ನನ್ನನ್ನು ಭಯಪಡಿರಿ. ಇಂದು ನಾನು ನಿಮಗೆ ನಿಮ್ಮ ಧರ್ಮವನ್ನು ಪೂರ್ತೀಕರಿಸಿದ್ದೇನೆ. ನನ್ನ ಅನುಗ್ರಹವನ್ನು ನಿಮಗೆ ಸಂಪೂರ್ಣಗೊಳಿಸಿದ್ದೇನೆ. ಇಸ್ಲಾಮನ್ನು ನಿಮಗೆ ಧರ್ಮವಾಗಿ ನಾನು ಅಂಗೀಕರಿಸಿದ್ದೇನೆ. ಹಸಿವು ತಡೆಯಲಾಗದೆ, ನಿಷೇಧಿತ ವಸ್ತುಗಳನ್ನು ತಿನ್ನಲು ನಿರ್ಬಂಧಿತನಾದವನು ಯಾರೋ— ಅವನು ಪಾಪಕ್ಕೆ ವಾಲುವವನಲ್ಲದಿದ್ದರೆ (ಪಾಪ ಮಾಡುವ ಉದ್ದೇಶವನ್ನು ಹೊಂದಿಲ್ಲದಿದ್ದರೆ) ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

حُرِّمَتۡ عَلَيۡكُمُ ٱلۡمَيۡتَةُ وَٱلدَّمُ وَلَحۡمُ ٱلۡخِنزِيرِ وَمَآ أُهِلَّ لِغَيۡرِ ٱللَّهِ بِهِۦ وَٱلۡمُنۡخَنِقَةُ وَٱلۡمَوۡقُوذَةُ وَٱلۡمُتَرَدِّيَةُ وَٱلنَّطِيحَةُ وَمَآ أَكَلَ ٱلسَّبُعُ إِلَّا مَا ذَكَّيۡتُمۡ وَمَا ذُبِحَ عَلَى ٱلنُّصُبِ وَأَن تَسۡتَقۡسِمُواْ بِٱلۡأَزۡلَٰمِۚ ذَٰلِكُمۡ فِسۡقٌۗ ٱلۡيَوۡمَ يَئِسَ ٱلَّذِينَ كَفَرُواْ مِن دِينِكُمۡ فَلَا تَخۡشَوۡهُمۡ وَٱخۡشَوۡنِۚ ٱلۡيَوۡمَ أَكۡمَلۡتُ لَكُمۡ دِينَكُمۡ وَأَتۡمَمۡتُ عَلَيۡكُمۡ نِعۡمَتِي وَرَضِيتُ لَكُمُ ٱلۡإِسۡلَٰمَ دِينٗاۚ فَمَنِ ٱضۡطُرَّ فِي مَخۡمَصَةٍ غَيۡرَ مُتَجَانِفٖ لِّإِثۡمٖ فَإِنَّ ٱللَّهَ غَفُورٞ رَّحِيمٞ ٣

4. ಅವರಿಗೆ ಏನೆಲ್ಲಾ ಅನುಮತಿಸಲಾಗಿವೆಯೆಂದು ಅವರು ನಿಮ್ಮೊಡನೆ ಕೇಳುತ್ತಾರೆ. ಹೇಳಿರಿ: “ಎಲ್ಲಾ ಉತ್ತಮ ವಸ್ತುಗಳನ್ನು ನಿಮಗೆ ಅನುಮತಿಸಲಾಗಿದೆ. ಅಲ್ಲಾಹು ನಿಮಗೆ ಕಲಿಸಿಕೊಟ್ಟ ರೀತಿಯಲ್ಲಿ ನೀವು ತರಬೇತಿ ನೀಡಿದ ಬೇಟೆ ಪ್ರಾಣಿಗಳು, ನೀವು ತರಬೇತಿ ನೀಡಿದಂತೆ ಬೇಟೆಯನ್ನು ಹಿಡಿದು ತಂದರೆ ಅವುಗಳನ್ನು ತಿನ್ನಿರಿ. (ಅವುಗಳನ್ನು ಬೇಟೆಗೆ ಕಳುಹಿಸುವಾಗ) ಅಲ್ಲಾಹನ ಹೆಸರನ್ನು ಉಚ್ಛರಿಸಿರಿ. ಅಲ್ಲಾಹನನ್ನು ಭಯಪಡಿರಿ. ನಿಶ್ಚಯವಾಗಿಯೂ ಅಲ್ಲಾಹು ಅತಿವೇಗವಾಗಿ ವಿಚಾರಣೆ ಮಾಡುತ್ತಾನೆ.

يَسۡـَٔلُونَكَ مَاذَآ أُحِلَّ لَهُمۡۖ قُلۡ أُحِلَّ لَكُمُ ٱلطَّيِّبَٰتُ وَمَا عَلَّمۡتُم مِّنَ ٱلۡجَوَارِحِ مُكَلِّبِينَ تُعَلِّمُونَهُنَّ مِمَّا عَلَّمَكُمُ ٱللَّهُۖ فَكُلُواْ مِمَّآ أَمۡسَكۡنَ عَلَيۡكُمۡ وَٱذۡكُرُواْ ٱسۡمَ ٱللَّهِ عَلَيۡهِۖ وَٱتَّقُواْ ٱللَّهَۚ إِنَّ ٱللَّهَ سَرِيعُ ٱلۡحِسَابِ ٤

5. ಇಂದು ನಿಮಗೆ ಎಲ್ಲಾ ಉತ್ತಮ ವಸ್ತುಗಳನ್ನು ಅನುಮತಿಸಲಾಗಿದೆ. ಗ್ರಂಥದವರು ತಯಾರಿಸಿದ ಆಹಾರವು ನಿಮಗೆ ಧರ್ಮಸಮ್ಮತವಾಗಿದೆ ಮತ್ತು ನೀವು ತಯಾರಿಸಿದ ಆಹಾರವು ಅವರಿಗೆ ಧರ್ಮಸಮ್ಮತವಾಗಿದೆ. ಸತ್ಯವಿಶ್ವಾಸಿಗಳಲ್ಲಿ ಸೇರಿದ ಪರಿಶುದ್ಧ

ٱلۡيَوۡمَ أُحِلَّ لَكُمُ ٱلطَّيِّبَٰتُۖ وَطَعَامُ ٱلَّذِينَ أُوتُواْ ٱلۡكِتَٰبَ حِلّٞ لَّكُمۡ وَطَعَامُكُمۡ حِلّٞ لَّهُمۡۖ وَٱلۡمُحۡصَنَٰتُ مِنَ ٱلۡمُؤۡمِنَٰتِ وَٱلۡمُحۡصَنَٰتُ

مِنَ ٱلَّذِينَ أُوتُوا۟ ٱلْكِتَـٰبَ مِن قَبْلِكُمْ إِذَآ ءَاتَيْتُمُوهُنَّ أُجُورَهُنَّ مُحْصِنِينَ غَيْرَ مُسَـٰفِحِينَ وَلَا مُتَّخِذِىٓ أَخْدَانٍ ۗ وَمَن يَكْفُرْ بِٱلْإِيمَـٰنِ فَقَدْ حَبِطَ عَمَلُهُۥ وَهُوَ فِى ٱلْـَٔاخِرَةِ مِنَ ٱلْخَـٰسِرِينَ ﴿٥﴾

ಮಹಿಳೆಯರು ನಿಮಗೆ ಧರ್ಮಸಮ್ಮತವಾಗಿದ್ದಾರೆ. ಅದೇ ರೀತಿ ನಿಮಗಿಂತ ಮೊದಲು ಗ್ರಂಥ ನೀಡಲಾದವರಲ್ಲಿ ಸೇರಿದ ಪರಿಶುದ್ಧ ಮಹಿಳೆಯರು—ನೀವು ಅವರಿಗೆ ಅವರ ವಧುದಕ್ಷಿಣೆಯನ್ನು (ಮಹರ್) ನೀಡಿದರೆ—ನಿಮಗೆ ಧರ್ಮಸಮ್ಮತವಾಗಿದ್ದಾರೆ. ಆದರೆ ನೀವು ಅವರನ್ನು ವಿವಾಹವಾಗಲು ಬಯಸುವವರಾಗಿರಬೇಕು. ಅವರೊಡನೆ ವ್ಯಭಿಚಾರ ಮಾಡಲು ಅಥವಾ ರಹಸ್ಯವಾಗಿ ಪ್ರೇಮಿಸಲು ಬಯಸುವವರಾಗಿರಬಾರದು. ಯಾರು ಸತ್ಯವಿಶ್ವಾಸ-ವನ್ನು ತಿರಸ್ಕರಿಸುತ್ತಾನೋ ಅವನ ಕರ್ಮವು ನಿಷ್ಫಲವಾಗುವುದು. ಪರಲೋಕದಲ್ಲಿ ಅವನು ನಷ್ಟಹೊಂದಿದವರಲ್ಲಿ ಸೇರಿಕೊಳ್ಳುವನು.

---

يَـٰٓأَيُّهَا ٱلَّذِينَ ءَامَنُوٓا۟ إِذَا قُمْتُمْ إِلَى ٱلصَّلَوٰةِ فَٱغْسِلُوا۟ وُجُوهَكُمْ وَأَيْدِيَكُمْ إِلَى ٱلْمَرَافِقِ وَٱمْسَحُوا۟ بِرُءُوسِكُمْ وَأَرْجُلَكُمْ إِلَى ٱلْكَعْبَيْنِ ۚ وَإِن كُنتُمْ جُنُبًا فَٱطَّهَّرُوا۟ ۚ وَإِن كُنتُم مَّرْضَىٰٓ أَوْ عَلَىٰ سَفَرٍ أَوْ جَآءَ أَحَدٌ مِّنكُم مِّنَ ٱلْغَآئِطِ أَوْ لَـٰمَسْتُمُ ٱلنِّسَآءَ فَلَمْ تَجِدُوا۟ مَآءً فَتَيَمَّمُوا۟ صَعِيدًا طَيِّبًا فَٱمْسَحُوا۟ بِوُجُوهِكُمْ وَأَيْدِيكُم مِّنْهُ ۚ مَا يُرِيدُ ٱللَّهُ لِيَجْعَلَ عَلَيْكُم مِّنْ حَرَجٍ وَلَـٰكِن يُرِيدُ لِيُطَهِّرَكُمْ وَلِيُتِمَّ نِعْمَتَهُۥ عَلَيْكُمْ لَعَلَّكُمْ تَشْكُرُونَ ﴿٦﴾

6. ಓ ಸತ್ಯವಿಶ್ವಾಸಿಗಳೇ! ನೀವು ನಮಾಝ್‌ಗಾಗಿ ಸಿದ್ಧರಾದರೆ ನಿಮ್ಮ ಮುಖಗಳನ್ನು ಮತ್ತು ಮೊಣಕೈಗಳವರೆಗೆ ಎರಡು ಕೈಗಳನ್ನು ತೊಳೆಯಿರಿ, ತಲೆಗಳನ್ನು ಸವರಿರಿ ಮತ್ತು ಎರಡು ಕಾಲುಗಳನ್ನು ಹರಡುಗಂಟಿನ ತನಕ ತೊಳೆಯಿರಿ. ನೀವು ದೊಡ್ಡ ಅಶುದ್ಧಿಯ-ಲ್ಲಿದ್ದರೆ (ಸ್ನಾನ ಮಾಡಿ) ಶುದ್ಧರಾಗಿರಿ. ನೀವು ಅನಾರೋಗ್ಯದ-ಲ್ಲಿದ್ದರೆ ಅಥವಾ ಪ್ರಯಾಣದಲ್ಲಿದ್ದರೆ; ಅಥವಾ ನಿಮ್ಮಲ್ಲೊಬ್ಬನು ಮಲಮೂತ್ರ ವಿಸರ್ಜನೆ ಮಾಡಿ ಬಂದಿದ್ದರೆ, ಅಥವಾ ಮಹಿಳೆಯರನ್ನು ಸ್ಪರ್ಶಿಸಿದ್ದರೆ (ಲೈಂಗಿಕ ಸಂಪರ್ಕ ಮಾಡಿದ್ದರೆ); ನಂತರ ನಿಮಗೆ ಶುದ್ಧಿಯಾಗಲು ನೀರು ದೊರೆಯದಿದ್ದರೆ, ಶುದ್ಧ ಮಣ್ಣಿನಿಂದ ತಯಮ್ಮುಮ್ ಮಾಡಿ, ಮುಖ ಮತ್ತು ಕೈಗಳನ್ನು ಸವರಿರಿ. ಅಲ್ಲಾಹು ನಿಮಗೆ ತೊಂದರೆ ಮಾಡಲು ಬಯಸುವುದಿಲ್ಲ. ಆದರೆ ಅವನು ನಿಮ್ಮನ್ನು ಶುದ್ಧೀಕರಿಸಲು ಮತ್ತು ತನ್ನ ಅನುಗ್ರಹವನ್ನು ನಿಮಗೆ ಪೂರ್ತಿ ಮಾಡಿಕೊಡಲು ಬಯಸುತ್ತಾನೆ. ನೀವು ಕೃತಜ್ಞರಾಗುವುದಕ್ಕಾಗಿ.

---

وَٱذْكُرُوا۟ نِعْمَةَ ٱللَّهِ عَلَيْكُمْ وَمِيثَـٰقَهُ ٱلَّذِى وَاثَقَكُم بِهِۦٓ إِذْ قُلْتُمْ سَمِعْنَا وَأَطَعْنَا ۖ وَٱتَّقُوا۟ ٱللَّهَ ۚ إِنَّ ٱللَّهَ عَلِيمٌۢ بِذَاتِ ٱلصُّدُورِ ﴿٧﴾

7. “ನಾವು ಕೇಳಿದ್ದೇವೆ ಮತ್ತು ಅನುಸರಿಸಿದ್ದೇವೆ” ಎಂದು ನೀವು ಹೇಳಿದ ಸಂದರ್ಭ ಅಲ್ಲಾಹು ನಿಮಗೆ ನೀಡಿರುವ ಅನುಗ್ರಹವನ್ನು ಮತ್ತು ಅವನು ನಿಮ್ಮಿಂದ ಬಲಿಷ್ಠ ಕರಾರು ಪಡೆದಿರುವುದನ್ನು ಸ್ಮರಿಸಿರಿ. ಅಲ್ಲಾಹನನ್ನು ಭಯಪಡಿರಿ. ನಿಶ್ಚಯವಾಗಿಯೂ ಅಲ್ಲಾಹು ಹೃದಯಗಳಲ್ಲಿರುವುದನ್ನು ತಿಳಿಯುತ್ತಾನೆ.

---

يَـٰٓأَيُّهَا ٱلَّذِينَ ءَامَنُوا۟ كُونُوا۟ قَوَّٰمِينَ لِلَّهِ شُهَدَآءَ بِٱلْقِسْطِ ۖ وَلَا يَجْرِمَنَّكُمْ شَنَـَٔانُ قَوْمٍ عَلَىٰٓ أَلَّا تَعْدِلُوا۟ ۚ ٱعْدِلُوا۟ هُوَ أَقْرَبُ لِلتَّقْوَىٰ ۖ وَٱتَّقُوا۟ ٱللَّهَ ۚ إِنَّ ٱللَّهَ خَبِيرٌۢ بِمَا تَعْمَلُونَ ﴿٨﴾

8. ಓ ಸತ್ಯವಿಶ್ವಾಸಿಗಳೇ! ನೀವು ಅಲ್ಲಾಹನಿಗಾಗಿ ಸದಾ ದೃಢವಾಗಿ ನಿಂತು ನ್ಯಾಯ-ನಿಷ್ಠೆಗೆ ಸಾಕ್ಷಿಯಾಗಿರಿ. ಕೆಲವು ಜನರೊಡನೆ ನಿಮಗಿರುವ ದ್ವೇಷವು ನ್ಯಾಯಯುತವಾಗಿ ವರ್ತಿಸದಂತೆ ನಿಮ್ಮನ್ನು ಪ್ರೇರೇಪಿಸದಿರಲಿ. ನ್ಯಾಯಯುತವಾಗಿ ನಡೆದುಕೊಳ್ಳಿ, ಅದು ದೇವಭಯಕ್ಕೆ ಅತ್ಯಂತ ಹತ್ತಿರದಲ್ಲಿದೆ. ಅಲ್ಲಾಹನನ್ನು

ಭಯಪಡಿರಿ. ನಿಶ್ಚಯವಾಗಿಯೂ ನೀವು ಮಾಡುವುದನ್ನು ಅಲ್ಲಾಹು ಸೂಕ್ಷ್ಮವಾಗಿ ತಿಳಿಯುತ್ತಾನೆ.

---

9. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ—ಅವರಿಗೆ ಅಲ್ಲಾಹು ಕ್ಷಮೆ ಮತ್ತು ಮಹಾ ಪ್ರತಿಫಲದ ವಾಗ್ದಾನ ಮಾಡಿದ್ದಾನೆ.

وَعَدَ ٱللَّهُ ٱلَّذِينَ ءَامَنُواْ وَعَمِلُواْ ٱلصَّٰلِحَٰتِ لَهُم مَّغۡفِرَةٞ وَأَجۡرٌ عَظِيمٞ ٩

---

10. ಸತ್ಯನಿಷೇಧಿಗಳು ಮತ್ತು ನಮ್ಮ ವಚನಗಳನ್ನು ನಿಷೇಧಿಸಿದವರು ಯಾರೋ—ಅವರೇ ನರಕವಾಸಿಗಳು.

وَٱلَّذِينَ كَفَرُواْ وَكَذَّبُواْ بِـَٔايَٰتِنَآ أُوْلَٰٓئِكَ أَصۡحَٰبُ ٱلۡجَحِيمِ ١٠

---

11. ಓ ಸತ್ಯವಿಶ್ವಾಸಿಗಳೇ! ಜನರು ನಿಮ್ಮ ವಿರುದ್ಧ ತಮ್ಮ ಕೈಗಳನ್ನು ಚಾಚಲು ಮುಂದಾದ ಸಂದರ್ಭ, ಅವರ ಕೈಗಳನ್ನು ನಿಮ್ಮಿಂದ ತಡೆಯುವ ಮೂಲಕ ಅಲ್ಲಾಹು ನಿಮಗೆ ನೀಡಿದ ಅನುಗ್ರಹವನ್ನು ಸ್ಮರಿಸಿರಿ. ಅಲ್ಲಾಹನನ್ನು ಭಯಪಡಿರಿ. ಸತ್ಯವಿಶ್ವಾಸಿಗಳು ಅಲ್ಲಾಹನಲ್ಲಿಯೇ ಭರವಸೆಯಿಡಲಿ.

يَٰٓأَيُّهَا ٱلَّذِينَ ءَامَنُواْ ٱذۡكُرُواْ نِعۡمَتَ ٱللَّهِ عَلَيۡكُمۡ إِذۡ هَمَّ قَوۡمٌ أَن يَبۡسُطُوٓاْ إِلَيۡكُمۡ أَيۡدِيَهُمۡ فَكَفَّ أَيۡدِيَهُمۡ عَنكُمۡۖ وَٱتَّقُواْ ٱللَّهَۚ وَعَلَى ٱللَّهِ فَلۡيَتَوَكَّلِ ٱلۡمُؤۡمِنُونَ ١١

---

12. ಅಲ್ಲಾಹು ಇಸ್ರಾಯೇಲ್ ಮಕ್ಕಳಿಂದ ಈಗಾಗಲೇ ಕರಾರನ್ನು ಪಡೆದಿದ್ದಾನೆ. ನಾವು ಅವರಲ್ಲಿ ಹನ್ನೆರಡು ಜನರನ್ನು ಮುಖಂಡರನ್ನಾಗಿ ಮಾಡಿ ಕಳುಹಿಸಿದೆವು. ಅಲ್ಲಾಹು ಹೇಳಿದನು: "ನಿಶ್ಚಯವಾಗಿಯೂ ನಾನು ನಿಮ್ಮ ಜೊತೆಯಲ್ಲಿದ್ದೇನೆ. ನೀವು ನಮಾಝ್ ಸಂಸ್ಥಾಪಿಸಿದರೆ, ಝಕಾತ್ ನೀಡಿದರೆ, ನನ್ನ ಸಂದೇಶವಾಹಕರುಗಳಲ್ಲಿ ವಿಶ್ವಾಸವಿಟ್ಟರೆ, ಅವರಿಗೆ ಬೆಂಬಲ ನೀಡಿದರೆ ಮತ್ತು ಅಲ್ಲಾಹನಿಗೆ ಉತ್ತಮ ಸಾಲವನ್ನು ನೀಡಿದರೆ, ನಿಶ್ಚಯವಾಗಿಯೂ ನಾನು ನಿಮ್ಮ ಪಾಪಗಳನ್ನು ಅಳಿಸುವೆನು ಮತ್ತು ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳಿಗೆ ನಿಮ್ಮನ್ನು ಪ್ರವೇಶ ಮಾಡಿಸುವೆನು. ಆದರೆ ಅದರ ಬಳಿಕವೂ ನಿಮ್ಮಲ್ಲಿ ಸತ್ಯವನ್ನು ನಿಷೇಧಿಸುವವನು ನೇರ ಮಾರ್ಗದಿಂದ ತಪ್ಪಿ ಹೋಗಿದ್ದಾನೆ."

وَلَقَدۡ أَخَذَ ٱللَّهُ مِيثَٰقَ بَنِيٓ إِسۡرَٰٓءِيلَ وَبَعَثۡنَا مِنۡهُمُ ٱثۡنَيۡ عَشَرَ نَقِيبٗاۖ وَقَالَ ٱللَّهُ إِنِّي مَعَكُمۡۖ لَئِنۡ أَقَمۡتُمُ ٱلصَّلَوٰةَ وَءَاتَيۡتُمُ ٱلزَّكَوٰةَ وَءَامَنتُم بِرُسُلِي وَعَزَّرۡتُمُوهُمۡ وَأَقۡرَضۡتُمُ ٱللَّهَ قَرۡضًا حَسَنٗا لَّأُكَفِّرَنَّ عَنكُمۡ سَيِّـَٔاتِكُمۡ وَلَأُدۡخِلَنَّكُمۡ جَنَّٰتٖ تَجۡرِي مِن تَحۡتِهَا ٱلۡأَنۡهَٰرُۚ فَمَن كَفَرَ بَعۡدَ ذَٰلِكَ مِنكُمۡ فَقَدۡ ضَلَّ سَوَآءَ ٱلسَّبِيلِ ١٢

---

13. ಅವರು ಕರಾರು ಉಲ್ಲಂಘಿಸಿದ ಕಾರಣ ನಾವು ಅವರನ್ನು ಶಪಿಸಿದೆವು ಮತ್ತು ಅವರ ಹೃದಯಗಳನ್ನು ಕಠೋರಗೊಳಿಸಿದೆವು. ಅವರು ವಚನಗಳನ್ನು ಅದರ ಸ್ಥಾನದಿಂದ ವಿರೂಪಗೊಳಿಸುತ್ತಾರೆ.[1] ಅವರಿಗೆ ಉಪದೇಶ ಮಾಡಲಾದ ಒಂದಂಶವನ್ನು ಅವರು ಮರೆತೇ ಬಿಟ್ಟರು. ಅವರು ಮಾಡುವ ವಂಚನೆಯನ್ನು

فَبِمَا نَقۡضِهِم مِّيثَٰقَهُمۡ لَعَنَّٰهُمۡ وَجَعَلۡنَا قُلُوبَهُمۡ قَٰسِيَةٗۖ يُحَرِّفُونَ ٱلۡكَلِمَ عَن مَّوَاضِعِهِۦ وَنَسُواْ حَظّٗا مِّمَّا ذُكِّرُواْ بِهِۦۚ وَلَا تَزَالُ تَطَّلِعُ عَلَىٰ خَآئِنَةٖ مِّنۡهُمۡ إِلَّا قَلِيلٗا مِّنۡهُمۡۖ فَٱعۡفُ عَنۡهُمۡ وَٱصۡفَحۡۚ إِنَّ ٱللَّهَ يُحِبُّ ٱلۡمُحۡسِنِينَ ١٣

---

[1] ಅಂದರೆ ಅವರು ಗ್ರಂಥದ ವಚನಗಳನ್ನು ಅಸಾಂದರ್ಭಿಕವಾಗಿ ಉಲ್ಲೇಖಿಸುತ್ತಾರೆ ಮತ್ತು ತಪ್ಪು ಅರ್ಥಗಳನ್ನು ನೀಡುತ್ತಾರೆ; ಅಥವಾ ವಚನಗಳನ್ನೇ ತಿದ್ದಿ ಬದಲಾಯಿಸುತ್ತಾರೆ.

ನೀವು ಗಮನಿಸುತ್ತಲೇ ಇರುವಿರಿ—ಅವರಲ್ಲಿ ಕೆಲವರ ಹೊರತು. ಆದ್ದರಿಂದ ಅವರನ್ನು ಕ್ಷಮಿಸಿರಿ ಮತ್ತು (ಅವರ ತಪ್ಪನ್ನು) ಕಡೆಗಣಿಸಿರಿ. ನಿಶ್ಚಯವಾಗಿಯೂ ಒಳಿತು ಮಾಡುವವರನ್ನು ಅಲ್ಲಾಹು ಇಷ್ಟಪಡುತ್ತಾನೆ.

---

وَمِنَ ٱلَّذِينَ قَالُوٓاْ إِنَّا نَصَٰرَىٰٓ أَخَذۡنَا مِيثَٰقَهُمۡ فَنَسُواْ حَظّٗا مِّمَّا ذُكِّرُواْ بِهِۦ فَأَغۡرَيۡنَا بَيۡنَهُمُ ٱلۡعَدَاوَةَ وَٱلۡبَغۡضَآءَ إِلَىٰ يَوۡمِ ٱلۡقِيَٰمَةِۚ وَسَوۡفَ يُنَبِّئُهُمُ ٱللَّهُ بِمَا كَانُواْ يَصۡنَعُونَ ﴿١٤﴾

14. “ನಾವು ಕ್ರೈಸ್ತರು” ಎಂದು ಹೇಳಿದವರಿಂದಲೂ ನಾವು ಕರಾರನ್ನು ಪಡೆದಿದ್ದೇವೆ. ಅವರಿಗೆ ಉಪದೇಶ ಮಾಡಲಾದ ಒಂದಂಶವನ್ನು ಅವರು ಮರೆತುಬಿಟ್ಟರು. ಆದ್ದರಿಂದ ಪುನರುತ್ಥಾನದ ದಿನದ ತನಕ ನಾವು ಅವರ ನಡುವೆ ವೈರ ಮತ್ತು ದ್ವೇಷವನ್ನು ಉಂಟುಮಾಡಿದೆವು. ಅವರು ಮಾಡಿದ ದುಷ್ಕರ್ಮಗಳ ಬಗ್ಗೆ ಅಲ್ಲಾಹು ಸದ್ಯವೇ ಅವರಿಗೆ ತಿಳಿಸಿಕೊಡುವನು.

---

يَٰٓأَهۡلَ ٱلۡكِتَٰبِ قَدۡ جَآءَكُمۡ رَسُولُنَا يُبَيِّنُ لَكُمۡ كَثِيرٗا مِّمَّا كُنتُمۡ تُخۡفُونَ مِنَ ٱلۡكِتَٰبِ وَيَعۡفُواْ عَن كَثِيرٖۚ قَدۡ جَآءَكُم مِّنَ ٱللَّهِ نُورٞ وَكِتَٰبٞ مُّبِينٞ ﴿١٥﴾

15. ಓ ಗ್ರಂಥದವರೇ! ನೀವು ಗ್ರಂಥದಿಂದ ಮುಚ್ಚಿಡುವ ಅನೇಕ ವಿಷಯಗಳನ್ನು ಬಹಿರಂಗಪಡಿಸುತ್ತಾ ಮತ್ತು ಹೆಚ್ಚಿನದ್ದನ್ನೂ ಕ್ಷಮಿಸುತ್ತಾ ನಮ್ಮ ಸಂದೇಶವಾಹಕರು ನಿಮ್ಮ ಬಳಿಗೆ ಬಂದಿದ್ದಾರೆ. ನಿಮಗೆ ಅಲ್ಲಾಹನಿಂದ ಒಂದು ಬೆಳಕು ಮತ್ತು ಸ್ಪಷ್ಟ ಗ್ರಂಥವು ಬಂದಿದೆ.

---

يَهۡدِي بِهِ ٱللَّهُ مَنِ ٱتَّبَعَ رِضۡوَٰنَهُۥ سُبُلَ ٱلسَّلَٰمِ وَيُخۡرِجُهُم مِّنَ ٱلظُّلُمَٰتِ إِلَى ٱلنُّورِ بِإِذۡنِهِۦ وَيَهۡدِيهِمۡ إِلَىٰ صِرَٰطٖ مُّسۡتَقِيمٖ ﴿١٦﴾

16. ತನ್ನ ಸಂಪ್ರೀತಿಯನ್ನು ಹಿಂಬಾಲಿಸುವವರಿಗೆ ಅಲ್ಲಾಹು ಅದರ ಮೂಲಕ ಶಾಂತಿಯ ಮಾರ್ಗಗಳನ್ನು ತೋರಿಸಿಕೊಡುವನು. ಅವನು ತನ್ನ ಅಪ್ಪಣೆಯಿಂದ ಅವರನ್ನು ಅಂಧಕಾರಗಳಿಂದ ಬೆಳಕಿಗೆ ಹೊರತರುವನು ಮತ್ತು ಅವರನ್ನು ನೇರಮಾರ್ಗಕ್ಕೆ ಮುನ್ನಡೆಸುವನು.

---

لَّقَدۡ كَفَرَ ٱلَّذِينَ قَالُوٓاْ إِنَّ ٱللَّهَ هُوَ ٱلۡمَسِيحُ ٱبۡنُ مَرۡيَمَۚ قُلۡ فَمَن يَمۡلِكُ مِنَ ٱللَّهِ شَيۡـًٔا إِنۡ أَرَادَ أَن يُهۡلِكَ ٱلۡمَسِيحَ ٱبۡنَ مَرۡيَمَ وَأُمَّهُۥ وَمَن فِي ٱلۡأَرۡضِ جَمِيعٗاۗ وَلِلَّهِ مُلۡكُ ٱلسَّمَٰوَٰتِ وَٱلۡأَرۡضِ وَمَا بَيۡنَهُمَاۚ يَخۡلُقُ مَا يَشَآءُۚ وَٱللَّهُ عَلَىٰ كُلِّ شَيۡءٖ قَدِيرٞ ﴿١٧﴾

17. “ಮರ್ಯಮರ ಮಗ ಮಸೀಹನೇ ಅಲ್ಲಾಹು” ಎಂದು ಹೇಳಿದವರು ಖಂಡಿತವಾಗಿಯೂ ಸತ್ಯವನ್ನು ನಿಷೇಧಿಸಿದ್ದಾರೆ. ಹೇಳಿರಿ: “ಅಲ್ಲಾಹು ಮರ್ಯಮರ ಮಗ ಮಸೀಹರನ್ನು, ಅವರ ತಾಯಿಯನ್ನು ಮತ್ತು ಭೂಮಿಯಲ್ಲಿರುವ ಸರ್ವ ಮಾನವರನ್ನು ನಾಶ ಮಾಡಲು ಬಯಸಿದರೆ ಅವನನ್ನು ತಡೆಯಲು ಯಾರಿಗೆ ಸಾಧ್ಯವಿದೆ?” ಭೂಮ್ಯಾಕಾಶಗಳ ಮತ್ತು ಅವುಗಳ ನಡುವೆಯಿರುವ ಎಲ್ಲಾ ವಸ್ತುಗಳ ಆಧಿಪತ್ಯವು ಅಲ್ಲಾಹನಿಗೆ ಸೇರಿದ್ದು. ಅವನು ಇಚ್ಛಿಸುವುದನ್ನು ಅವನು ಸೃಷ್ಟಿಸುತ್ತಾನೆ. ಅಲ್ಲಾಹು ಎಲ್ಲ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

---

وَقَالَتِ ٱلۡيَهُودُ وَٱلنَّصَٰرَىٰ نَحۡنُ أَبۡنَٰٓؤُاْ ٱللَّهِ وَأَحِبَّٰٓؤُهُۥۚ قُلۡ فَلِمَ يُعَذِّبُكُم بِذُنُوبِكُمۖ بَلۡ

18. ಯಹೂದಿಗಳು ಮತ್ತು ಕ್ರೈಸ್ತರು ಹೇಳುತ್ತಾರೆ: “ನಾವು ಅಲ್ಲಾಹನ ಮಕ್ಕಳು ಮತ್ತು ಅವನ ಪ್ರೀತಿಪಾತ್ರರು.”[1] ಹೇಳಿರಿ: “ಹಾಗಾದರೆ,

[1] ಯಹೂದಿಗಳು ಉಝೈರ್‌ರನ್ನು ಮತ್ತು ಕ್ರೈಸ್ತರು ಈಸಾರನ್ನು ಅಲ್ಲಾಹನ ಮಗನೆಂದು ಕರೆಯುತ್ತಿದ್ದರು. ಅಷ್ಟೇ ಅಲ್ಲದೆ, ಸ್ವತಃ ತಮ್ಮನ್ನು ದೇವರ

أَنتُم بَشَرٌ مِّمَّنۡ خَلَقَۚ يَغۡفِرُ لِمَن يَشَآءُ وَيُعَذِّبُ مَن يَشَآءُۚ وَلِلَّهِ مُلۡكُ ٱلسَّمَٰوَٰتِ وَٱلۡأَرۡضِ وَمَا بَيۡنَهُمَاۖ وَإِلَيۡهِ ٱلۡمَصِيرُ ﴿١٨﴾

ನೀವು ತಪ್ಪು ಮಾಡಿದರೆ ಅವನು ನಿಮ್ಮನ್ನು ಶಿಕ್ಷಿಸುವುದೇಕೆ?" ಅಲ್ಲ, ವಾಸ್ತವವಾಗಿ ನೀವೆಲ್ಲರೂ ಅವನ ಸೃಷ್ಟಿಗಳಲ್ಲಿ ಸೇರಿದ ಮನುಷ್ಯರು. ಅವನು ಇಚ್ಛಿಸುವವರಿಗೆ ಅವನು ಕ್ಷಮಿಸುತ್ತಾನೆ ಮತ್ತು ಅವನು ಇಚ್ಛಿಸುವವರನ್ನು ಶಿಕ್ಷಿಸುತ್ತಾನೆ. ಭೂಮ್ಯಾಕಾಶಗಳ ಮತ್ತು ಅವುಗಳ ನಡುವೆಯಿರುವ ಎಲ್ಲಾ ವಸ್ತುಗಳ ಆಧಿಪತ್ಯವು ಅಲ್ಲಾಹನಿಗೆ ಸೇರಿದ್ದು. ನೀವೆಲ್ಲರೂ ಅವನ ಬಳಿಗೇ ಮರಳಿ ಹೋಗಬೇಕಾಗಿದೆ.

---

يَٰٓأَهۡلَ ٱلۡكِتَٰبِ قَدۡ جَآءَكُمۡ رَسُولُنَا يُبَيِّنُ لَكُمۡ عَلَىٰ فَتۡرَةٖ مِّنَ ٱلرُّسُلِ أَن تَقُولُواْ مَا جَآءَنَا مِنۢ بَشِيرٖ وَلَا نَذِيرٖۖ فَقَدۡ جَآءَكُم بَشِيرٞ وَنَذِيرٞۗ وَٱللَّهُ عَلَىٰ كُلِّ شَيۡءٖ قَدِيرٞ ﴿١٩﴾

19. ಓ ಗ್ರಂಥದವರೇ! ಸಂದೇಶವಾಹಕರ ಆಗಮನವು ನಿಂತುಹೋದ ಬಳಿಕ ಇಗೋ ಸತ್ಯವನ್ನು ವಿವರಿಸಿಕೊಡುತ್ತಾ ನಮ್ಮ ಸಂದೇಶವಾಹಕರು ನಿಮ್ಮ ಬಳಿಗೆ ಬಂದಿದ್ದಾರೆ. "ಒಬ್ಬ ಸುವಾರ್ತೆ ನೀಡುವವನು ಮತ್ತು ಮುನ್ನೆಚ್ಚರಿಕೆ ನೀಡುವವನು ನಮ್ಮ ಬಳಿಗೆ ಬರಲಿಲ್ಲ" ಎಂದು ನೀವು ಹೇಳದಿರುವುದಕ್ಕಾಗಿ. ಇಗೋ ನಿಮ್ಮ ಬಳಿಗೆ ಸುವಾರ್ತೆ ತಿಳಿಸುವ ಮತ್ತು ಮುನ್ನೆಚ್ಚರಿಕೆ ನೀಡುವ ಪ್ರವಾದಿಯು ಬಂದಿದ್ದಾರೆ. ಅಲ್ಲಾಹು ಎಲ್ಲ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

---

وَإِذۡ قَالَ مُوسَىٰ لِقَوۡمِهِۦ يَٰقَوۡمِ ٱذۡكُرُواْ نِعۡمَةَ ٱللَّهِ عَلَيۡكُمۡ إِذۡ جَعَلَ فِيكُمۡ أَنۢبِيَآءَ وَجَعَلَكُم مُّلُوكٗا وَءَاتَىٰكُم مَّا لَمۡ يُؤۡتِ أَحَدٗا مِّنَ ٱلۡعَٰلَمِينَ ﴿٢٠﴾

20. ಮೂಸಾ ತಮ್ಮ ಜನರೊಡನೆ ಹೇಳಿದ ಸಂದರ್ಭ: "ಓ ನನ್ನ ಜನರೇ! ಅಲ್ಲಾಹು ನಿಮ್ಮ ಬಳಿಗೆ ಪ್ರವಾದಿಗಳನ್ನು ಕಳುಹಿಸಿದಾಗ, ನಿಮ್ಮನ್ನು ಅರಸರನ್ನಾಗಿ ಮಾಡಿದಾಗ ಮತ್ತು ಸರ್ವಲೋಕದವರಲ್ಲಿ ಯಾರಿಗೂ ನೀಡದ ಅನೇಕ ಸವಲತ್ತುಗಳನ್ನು ನೀಡಿ ನಿಮ್ಮನ್ನು ಹರಸಿದಾಗ ಅಲ್ಲಾಹು ನಿಮಗೆ ಮಾಡಿದ ಉಪಕಾರವನ್ನು ಸ್ಮರಿಸಿರಿ.

---

يَٰقَوۡمِ ٱدۡخُلُواْ ٱلۡأَرۡضَ ٱلۡمُقَدَّسَةَ ٱلَّتِي كَتَبَ ٱللَّهُ لَكُمۡ وَلَا تَرۡتَدُّواْ عَلَىٰٓ أَدۡبَارِكُمۡ فَتَنقَلِبُواْ خَٰسِرِينَ ﴿٢١﴾

21. ಓ ನನ್ನ ಜನರೇ! ಅಲ್ಲಾಹು ನಿಮಗೆ ಲಿಖಿತಗೊಳಿಸಿದ ಪವಿತ್ರ ಭೂಮಿಯನ್ನು ಪ್ರವೇಶಿಸಿರಿ. ನೀವು ಬೆನ್ನು ತಿರುಗಿಸಿ ಹಿಂದಿರುಗಬೇಡಿ. ಹಾಗೆ ಮಾಡಿದರೆ ನೀವು ನಷ್ಟಹೊಂದಿದವರಾಗಿ ಬಿಡುವಿರಿ."[1]

---

ಮಕ್ಕಳು ಮತ್ತು ದೇವರ ಪ್ರೀತಿಪಾತ್ರರೆಂದು ಅಹಂಭಾವದಿಂದ ಹೇಳುತ್ತಿದ್ದರು.

[1] ಯೂಸುಫರು (ಅವರ ಮೇಲೆ ಶಾಂತಿಯಿರಲಿ) ಈಜಿಪ್ಟಿನಲ್ಲಿ ರಾಜನಾದಾಗ ಇಸ್ರಾಯೇಲ್ ಮಕ್ಕಳು ಅಲ್ಲಿಗೆ ತೆರಳಿ ಅಲ್ಲಿ ವಾಸಿಸತೊಡಗಿದರು. ನಂತರ ಈಜಿಪ್ಟನ್ನು ಆಳಿದ ಫರೋಹಗಳ ಕೈಯಲ್ಲಿ ಅವರು ಕ್ರೂರ ಹಿಂಸೆಯನ್ನು ಮತ್ತು ಗುಲಾಮಗಿರಿಯನ್ನು ಅನುಭವಿಸಬೇಕಾಗಿ ಬಂತು. ಪವಿತ್ರ ಭೂಮಿಯಲ್ಲಿ (ಪ್ಯಾಲಸ್ತೀನ್‌ನಲ್ಲಿ) ಅವರನ್ನು ವಾಸ ಮಾಡಿಸುವೆನೆಂದು ಅಲ್ಲಾಹು ಅವರಿಗೆ ಪ್ರವಾದಿಗಳ ಮೂಲಕ ವಾಗ್ದಾನ ಮಾಡಿದ್ದನು. ಆದರೆ ಅವರು ವೀರಾವೇಶದಿಂದ ಯುದ್ಧ ಮಾಡಿ ಆ ಭೂಮಿಯನ್ನು ಗೆಲ್ಲಬೇಕಾಗಿತ್ತು. ಆದರೆ ಇಸ್ರಾಯೇಲರು ಯುದ್ಧ ಮಾಡಲು ಹಿಂಜರಿದರು. ಅವರ ಅವಿಧೇಯತೆಯಿಂದಾಗಿ ಅಲ್ಲಾಹು ಅವರಿಗೆ ನಲ್ವತ್ತು ವರ್ಷಗಳ ಕಾಲ ಸೀನಾ ಮರುಭೂಮಿಯಲ್ಲಿ ಅಲೆಯುವ ಶಿಕ್ಷೆಯನ್ನು ನೀಡಿದನು. ಈ ಮಧ್ಯೆ ಮೂಸಾ ಮತ್ತು ಹಾರೂನ್ (ಅವರ ಮೇಲೆ ಶಾಂತಿಯಿರಲಿ) ನಿಧನರಾದರು. ನಂತರ ಯೂಶಅ್ ರ (ಅವರ ಮೇಲೆ ಶಾಂತಿಯಿರಲಿ) ಕಾಲದಲ್ಲಿ ಅವರಿಗೆ ಪವಿತ್ರ ಭೂಮಿಯಲ್ಲಿ ವಾಸ ಮಾಡಲು ಸಾಧ್ಯವಾಯಿತು.

22. ಅವರು ಹೇಳಿದರು: “ಓ ಮೂಸಾ! ಅಲ್ಲಿ ಮಹಾ ಪರಾಕ್ರಮಿಗಳಾದ ಜನರಿದ್ದಾರೆ. ಅವರು ಅಲ್ಲಿಂದ ಹೊರಟುಹೋಗುವ ತನಕ ನಾವು ಅದನ್ನು ಪ್ರವೇಶಿಸುವುದಿಲ್ಲ. ಅವರೇನಾದರೂ ಹೊರಟುಬಿಟ್ಟರೆ ನಾವು ಖಂಡಿತ ಅದನ್ನು ಪ್ರವೇಶಿಸುವೆವು.”

قَالُواْ يَٰمُوسَىٰٓ إِنَّ فِيهَا قَوۡمٗا جَبَّارِينَ وَإِنَّا لَن
نَّدۡخُلَهَا حَتَّىٰ يَخۡرُجُواْ مِنۡهَا فَإِن يَخۡرُجُواْ مِنۡهَا
فَإِنَّا دَٰخِلُونَ ﴿٢٢﴾

23. ದೇವಭಯವುಳ್ಳ ಜನರಲ್ಲಿ ಅಲ್ಲಾಹನ ಅನುಗ್ರಹಕ್ಕೆ ಪಾತ್ರರಾದ ಇಬ್ಬರು ಹೇಳಿದರು: “ನೀವು ಹೆಬ್ಬಾಗಿಲ ಮೂಲಕ ಅದರೊಳಗೆ ಪ್ರವೇಶಿಸಿರಿ. ನೀವು ಪ್ರವೇಶಿಸಿದರೆ, ನಿಶ್ಚಯವಾಗಿಯೂ ನೀವು ಜಯಶಾಲಿಗಳಾಗುವಿರಿ. ನೀವು ಸತ್ಯವಿಶ್ವಾಸಿಗಳಾಗಿದ್ದರೆ ಅಲ್ಲಾಹನಲ್ಲಿ ಭರವಸೆಯಿಡಿರಿ.”

قَالَ رَجُلَانِ مِنَ ٱلَّذِينَ يَخَافُونَ أَنۡعَمَ ٱللَّهُ
عَلَيۡهِمَا ٱدۡخُلُواْ عَلَيۡهِمُ ٱلۡبَابَ فَإِذَا دَخَلۡتُمُوهُ
فَإِنَّكُمۡ غَٰلِبُونَۚ وَعَلَى ٱللَّهِ فَتَوَكَّلُوٓاْ إِن كُنتُم
مُّؤۡمِنِينَ ﴿٢٣﴾

24. ಅವರು ಹೇಳಿದರು: “ಓ ಮೂಸಾ! ಅವರು ಅಲ್ಲಿರುವ ತನಕ ನಾವು ಅದನ್ನು ಪ್ರವೇಶಿಸುವುದೇ ಇಲ್ಲ. ಆದ್ದರಿಂದ ನೀವು ಮತ್ತು ನಿಮ್ಮ ಪರಿಪಾಲಕ (ಅಲ್ಲಾಹು) ಹೋಗಿ ಯುದ್ಧ ಮಾಡಿರಿ. ನಾವು ಇಲ್ಲೇ ಕುಳಿತುಕೊಳ್ಳುತ್ತೇವೆ.”

قَالُواْ يَٰمُوسَىٰٓ إِنَّا لَن نَّدۡخُلَهَآ أَبَدٗا مَّا دَامُواْ
فِيهَا فَٱذۡهَبۡ أَنتَ وَرَبُّكَ فَقَٰتِلَآ إِنَّا هَٰهُنَا
قَٰعِدُونَ ﴿٢٤﴾

25. ಮೂಸಾ ಹೇಳಿದರು: “ಓ ನನ್ನ ಪರಿಪಾಲಕನೇ! ನಾನು ಮತ್ತು ನನ್ನ ಸಹೋದರ ಮಾತ್ರ ನನ್ನ ನಿಯಂತ್ರಣದಲ್ಲಿದ್ದಾರೆ. ಆದ್ದರಿಂದ ನಮ್ಮನ್ನು ಮತ್ತು ವಿಧೇಯತೆಯಿಲ್ಲದ ಈ ಜನರನ್ನು ಪರಸ್ಪರ ಬೇರ್ಪಡಿಸು.”

قَالَ رَبِّ إِنِّي لَآ أَمۡلِكُ إِلَّا نَفۡسِي وَأَخِيۖ فَٱفۡرُقۡ
بَيۡنَنَا وَبَيۡنَ ٱلۡقَوۡمِ ٱلۡفَٰسِقِينَ ﴿٢٥﴾

26. ಅಲ್ಲಾಹು ಹೇಳಿದನು: “ನಿಶ್ಚಯವಾಗಿಯೂ ನಲ್ವತ್ತು ವರ್ಷಗಳ ಕಾಲ ಆ ಭೂಮಿಯನ್ನು ಅವರಿಗೆ ನಿಷೇಧಿಸಲಾಗಿದೆ. (ಅಲ್ಲಿಯ ತನಕ) ಅವರು ಭೂಮಿಯಲ್ಲಿ ಗೊತ್ತುಗುರಿಯಿಲ್ಲದೆ ಅಲೆದಾಡುವರು. ವಿಧೇಯತೆಯಿಲ್ಲದ ಆ ಜನರ ಬಗ್ಗೆ ನೀವು ವ್ಯಥೆಪಡಬೇಡಿ.”

قَالَ فَإِنَّهَا مُحَرَّمَةٌ عَلَيۡهِمۡۛ أَرۡبَعِينَ سَنَةٗۛ يَتِيهُونَ
فِي ٱلۡأَرۡضِۚ فَلَا تَأۡسَ عَلَى ٱلۡقَوۡمِ ٱلۡفَٰسِقِينَ ﴿٢٦﴾

27. ಅವರಿಗೆ ಆದಮರ ಇಬ್ಬರು ಮಕ್ಕಳ ಸಮಾಚಾರವನ್ನು ಸತ್ಯಸಹಿತ ಓದಿ ಕೊಡಿ. ಅವರಿಬ್ಬರು ಬಲಿ ಅರ್ಪಿಸಿದ ಸಂದರ್ಭ. ಆಗ ಅವರಲ್ಲಿ ಒಬ್ಬನ ಬಲಿ ಸ್ವೀಕಾರವಾದರೆ ಇನ್ನೊಬ್ಬನದ್ದು ಸ್ವೀಕಾರವಾಗಲಿಲ್ಲ. ಅವನು (ಬಲಿ ಸ್ವೀಕಾರವಾಗದವನು) ಹೇಳಿದನು: “ನಾನು ನಿನ್ನನ್ನು ಖಂಡಿತ ಕೊಲ್ಲುತ್ತೇನೆ.” ಇನ್ನೊಬ್ಬನು ಹೇಳಿದನು: “ಅಲ್ಲಾಹು ದೇವಭಯವುಳ್ಳವರಿಂದ ಮಾತ್ರ ಸ್ವೀಕರಿಸುತ್ತಾನೆ.

وَٱتۡلُ عَلَيۡهِمۡ نَبَأَ ٱبۡنَيۡ ءَادَمَ بِٱلۡحَقِّ إِذۡ قَرَّبَا
قُرۡبَانٗا فَتُقُبِّلَ مِنۡ أَحَدِهِمَا وَلَمۡ يُتَقَبَّلۡ مِنَ
ٱلۡأٓخَرِ قَالَ لَأَقۡتُلَنَّكَۖ قَالَ إِنَّمَا يَتَقَبَّلُ ٱللَّهُ مِنَ
ٱلۡمُتَّقِينَ ﴿٢٧﴾

28. ನನ್ನನ್ನು ಕೊಲ್ಲಲು ನೀನು ನಿನ್ನ ಕೈಯನ್ನು ನನ್ನ ಕಡೆಗೆ

لَئِنۢ بَسَطتَ إِلَيَّ يَدَكَ لِتَقۡتُلَنِي مَآ أَنَا۠ بِبَاسِطٖ

ಚಾಚಿದರೂ ನಾನು ನಿನ್ನನ್ನು ಕೊಲ್ಲಲು ನನ್ನ ಕೈಯನ್ನು ನಿನ್ನ
ಕಡೆಗೆ ಚಾಚುವುದಿಲ್ಲ. ನಿಶ್ಚಯವಾಗಿಯೂ ಸರ್ವಲೋಕಗಳ
ಪರಿಪಾಲಕನಾದ ಅಲ್ಲಾಹನನ್ನು ನಾನು ಭಯಪಡುತ್ತೇನೆ.

يَدِىَ إِلَيْكَ لِأَقْتُلَكَ ۖ إِنِّىٓ أَخَافُ ٱللَّهَ رَبَّ
ٱلْعَـٰلَمِينَ ﴿٢٨﴾

---

29. ನೀನು ನನ್ನ ಪಾಪ ಮತ್ತು ನಿನ್ನ ಪಾಪದೊಂದಿಗೆ ಹಿಂದಿರುಗಿ
ನರಕವಾಸಿಗಳಲ್ಲಿ ಸೇರಬೇಕೆಂದು ನಾನು ಬಯಸುತ್ತೇನೆ. ಅದು
ಅಕ್ರಮಿಗಳಿಗೆ ದೊರೆಯುವ ಪ್ರತಿಫಲವಾಗಿದೆ."

إِنِّىٓ أُرِيدُ أَن تَبُوٓأَ بِإِثْمِى وَإِثْمِكَ فَتَكُونَ مِنْ
أَصْحَـٰبِ ٱلنَّارِ ۚ وَذَٰلِكَ جَزَٰٓؤُا۟ ٱلظَّـٰلِمِينَ ﴿٢٩﴾

---

30. ಆಗ ಅವನ ಸಹೋದರನನ್ನು ಕೊಲ್ಲುವಂತೆ ಅವನ ಮನಸ್ಸು
ಅವನನ್ನು ಪ್ರೇರೇಪಿಸಿತು. ಅವನು ಅವನನ್ನು ಕೊಂದನು ಮತ್ತು
ನಷ್ಟಹೊಂದಿದವರಲ್ಲಿ ಸೇರಿದವನಾದನು.

فَطَوَّعَتْ لَهُۥ نَفْسُهُۥ قَتْلَ أَخِيهِ فَقَتَلَهُۥ
فَأَصْبَحَ مِنَ ٱلْخَـٰسِرِينَ ﴿٣٠﴾

---

31. ಆಗ ಅವನ ಸಹೋದರನ ಕಳೇಬರವನ್ನು ದಫನ ಮಾಡುವುದು
ಹೇಗೆಂದು ಅವನಿಗೆ ತೋರಿಸಿಕೊಡಲು ಅಲ್ಲಾಹು ಭೂಮಿಯನ್ನು
ಅಗೆಯುವ ಒಂದು ಕಾಗೆಯನ್ನು ಕಳುಹಿಸಿದನು. ಅವನು
ಹೇಳಿದನು: "ಅಯ್ಯೋ ನನ್ನ ದುರ್ಗತಿಯೇ! ಈ ಕಾಗೆಯಂತೆ ನನ್ನ
ಸಹೋದರನ ಕಳೇಬರವನ್ನು ದಫನ ಮಾಡಲು ಕೂಡ ನನಗೆ
ಸಾಧ್ಯವಾಗಲಿಲ್ಲವೇ?" ಹೀಗೆ ಅವನು ವಿಷಾದಪಡುವವರಲ್ಲಿ
ಸೇರಿದವನಾದನು.

فَبَعَثَ ٱللَّهُ غُرَابًا يَبْحَثُ فِى ٱلْأَرْضِ لِيُرِيَهُۥ
كَيْفَ يُوَٰرِى سَوْءَةَ أَخِيهِ ۚ قَالَ يَـٰوَيْلَتَىٰٓ
أَعَجَزْتُ أَنْ أَكُونَ مِثْلَ هَـٰذَا ٱلْغُرَابِ
فَأُوَٰرِىَ سَوْءَةَ أَخِى ۖ فَأَصْبَحَ مِنَ ٱلنَّـٰدِمِينَ ﴿٣١﴾

---

32. ಇದೇ ಕಾರಣದಿಂದ, ನಾವು ಇಸ್ರಾಯೇಲ್ ಮಕ್ಕಳಿಗೆ ಹೀಗೆ
ವಿಧಿಸಿದೆವು: ಕೊಲೆಗೆ ಪ್ರತೀಕಾರವಾಗಿ ಅಥವಾ ಭೂಮಿಯಲ್ಲಿ
ಕಿಡಿಗೇಡಿತನ ಮಾಡಿದ್ದಕ್ಕಾಗಿ ಹೊರತು ಒಬ್ಬ ವ್ಯಕ್ತಿಯನ್ನು
ಯಾರಾದರೂ ಕೊಂದರೆ ಅದು ಸಂಪೂರ್ಣ ಮನುಕುಲವನ್ನು
ಕೊಲ್ಲುವುದಕ್ಕೆ ಸಮಾನವಾಗಿದೆ ಮತ್ತು ಒಬ್ಬ ವ್ಯಕ್ತಿಯ
ಜೀವವನ್ನು ಯಾರಾದರೂ ಉಳಿಸಿದರೆ ಅದು ಸಂಪೂರ್ಣ
ಮನುಕುಲದ ಜೀವವನ್ನು ಉಳಿಸಿದ್ದಕ್ಕೆ ಸಮಾನವಾಗಿದೆ. ನಮ್ಮ
ಸಂದೇಶವಾಹಕರು ಈಗಾಗಲೇ ಸ್ಪಷ್ಟ ಸಾಕ್ಷ್ಯಾಧಾರಗಳೊಂದಿಗೆ
ಅವರ ಬಳಿಗೆ ಬಂದಿದ್ದಾರೆ. ನಂತರ ಆ ಬಳಿಕವೂ ಅವರಲ್ಲಿ
ಅನೇಕ ಮಂದಿ ಭೂಮಿಯಲ್ಲಿ ಅತಿರೇಕವೆಸಗುತ್ತಲೇ ಇದ್ದಾರೆ.

مِنْ أَجْلِ ذَٰلِكَ كَتَبْنَا عَلَىٰ بَنِىٓ إِسْرَٰٓءِيلَ أَنَّهُۥ
مَن قَتَلَ نَفْسًۢا بِغَيْرِ نَفْسٍ أَوْ فَسَادٍ فِى ٱلْأَرْضِ
فَكَأَنَّمَا قَتَلَ ٱلنَّاسَ جَمِيعًا وَمَنْ أَحْيَاهَا
فَكَأَنَّمَآ أَحْيَا ٱلنَّاسَ جَمِيعًا ۚ وَلَقَدْ جَآءَتْهُمْ
رُسُلُنَا بِٱلْبَيِّنَـٰتِ ثُمَّ إِنَّ كَثِيرًا مِّنْهُم بَعْدَ ذَٰلِكَ
فِى ٱلْأَرْضِ لَمُسْرِفُونَ ﴿٣٢﴾

---

33. ಅಲ್ಲಾಹು ಮತ್ತು ಅವನ ಸಂದೇಶವಾಹಕರ ವಿರುದ್ಧ
ಹೋರಾಡುವವರು ಮತ್ತು ಭೂಮಿಯಲ್ಲಿ ಕಿಡಿಗೇಡಿತನ
ಮಾಡಲು ಯತ್ನಿಸುವವರು ಯಾರೋ—ಅವರಿಗೆ
ನೀಡಲಾಗುವ ಪ್ರತಿಫಲವು ಅವರನ್ನು ಸಾಯಿಸುವುದು, ಅಥವಾ
ಶಿಲುಬೆಗೇರಿಸುವುದು, ಅಥವಾ ಅವರ ಕೈಕಾಲುಗಳನ್ನು ವಿರುದ್ಧ
ದಿಕ್ಕಿನಿಂದ ಕತ್ತರಿಸುವುದು ಅಥವಾ ಅವರನ್ನು ಗಡಿಪಾರು

إِنَّمَا جَزَٰٓؤُا۟ ٱلَّذِينَ يُحَارِبُونَ ٱللَّهَ وَرَسُولَهُۥ
وَيَسْعَوْنَ فِى ٱلْأَرْضِ فَسَادًا أَن يُقَتَّلُوٓا۟ أَوْ
يُصَلَّبُوٓا۟ أَوْ تُقَطَّعَ أَيْدِيهِمْ وَأَرْجُلُهُم مِّنْ خِلَـٰفٍ
أَوْ يُنفَوْا۟ مِنَ ٱلْأَرْضِ ۚ ذَٰلِكَ لَهُمْ خِزْىٌ فِى ٱلدُّنْيَا ۖ
وَلَهُمْ فِى ٱلْـَٔاخِرَةِ عَذَابٌ عَظِيمٌ ﴿٣٣﴾

ಮಾಡುವುದು ಮಾತ್ರವಾಗಿದೆ. ಅದು ಅವರಿಗೆ ಇಹಲೋಕದ-ಲ್ಲಿರುವ ಅಪಮಾನವಾಗಿದೆ. ಪರಲೋಕದಲ್ಲಿ ಅವರಿಗೆ ಕಠೋರ ಶಿಕ್ಷೆಯಿದೆ.

---

**34.** ಆದರೆ, ಅವರ ವಿರುದ್ಧ ಕ್ರಮ ಕೈಗೊಳ್ಳಲು ನಿಮಗೆ ಸಾಧ್ಯವಾಗು-ವುದಕ್ಕೆ ಮೊದಲು ಪಶ್ಚಾತ್ತಾಪಪಟ್ಟು ಮರಳಿದವರು ಇದರಿಂದ ಹೊರತಾಗಿದ್ದಾರೆ. ತಿಳಿಯಿರಿ! ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

إِلَّا ٱلَّذِينَ تَابُواْ مِن قَبۡلِ أَن تَقۡدِرُواْ عَلَيۡهِمۡۖ
فَٱعۡلَمُوٓاْ أَنَّ ٱللَّهَ غَفُورٞ رَّحِيمٞ ٣٤

---

**35.** ಓ ಸತ್ಯವಿಶ್ವಾಸಿಗಳೇ! ಅಲ್ಲಾಹನನ್ನು ಭಯಪಡಿರಿ ಮತ್ತು ಅವನಿಗೆ ಸಮೀಪಗೊಳಿಸುವ ವಸೀಲ (ಮಾಧ್ಯಮ)ವನ್ನು ಹುಡುಕಿರಿ;[1] ಮತ್ತು ಅವನ ಮಾರ್ಗದಲ್ಲಿ ಹೋರಾಡಿರಿ. ನೀವು ಯಶಸ್ವಿಯಾಗುವುದಕ್ಕಾಗಿ.

يَٰٓأَيُّهَا ٱلَّذِينَ ءَامَنُواْ ٱتَّقُواْ ٱللَّهَ وَٱبۡتَغُوٓاْ
إِلَيۡهِ ٱلۡوَسِيلَةَ وَجَٰهِدُواْ فِي سَبِيلِهِۦ لَعَلَّكُمۡ
تُفۡلِحُونَ ٣٥

---

**36.** ನಿಶ್ಚಯವಾಗಿಯೂ ಸತ್ಯನಿಷೇಧಿಗಳ ಬಳಿ ಭೂಮಿಯಲ್ಲಿರುವ ಎಲ್ಲಾ ವಸ್ತುಗಳೂ ಮತ್ತು ಅದರಷ್ಟೇ ಬೇರೆಯೂ ಇದ್ದು, ಪುನರುತ್ಥಾನ ದಿನದ ಶಿಕ್ಷೆಯಿಂದ ಪಾರಾಗಲು ಅವರು ಅದನ್ನು ಪರಿಹಾರವಾಗಿ ನೀಡಿದರೆ, ಅವರಿಂದ ಅದನ್ನು ಸ್ವೀಕರಿಸಲಾಗು-ವುದಿಲ್ಲ. ಅವರಿಗೆ ಯಾತನಾಮಯ ಶಿಕ್ಷೆಯಿದೆ.

إِنَّ ٱلَّذِينَ كَفَرُواْ لَوۡ أَنَّ لَهُم مَّا فِي ٱلۡأَرۡضِ
جَمِيعٗا وَمِثۡلَهُۥ مَعَهُۥ لِيَفۡتَدُواْ بِهِۦ مِنۡ عَذَابِ
يَوۡمِ ٱلۡقِيَٰمَةِ مَا تُقُبِّلَ مِنۡهُمۡۖ وَلَهُمۡ عَذَابٌ
أَلِيمٞ ٣٦

---

**37.** ಅವರು ನರಕದಿಂದ ಹೊರಬರಲು ಬಯಸುವರು. ಆದರೆ ಅದರಿಂದ ಹೊರಬರಲು ಅವರಿಗೆ ಸಾಧ್ಯವಿಲ್ಲ. ಅವರಿಗೆ ಶಾಶ್ವತ ಶಿಕ್ಷೆಯಿದೆ.

يُرِيدُونَ أَن يَخۡرُجُواْ مِنَ ٱلنَّارِ وَمَا هُم
بِخَٰرِجِينَ مِنۡهَاۖ وَلَهُمۡ عَذَابٞ مُّقِيمٞ ٣٧

---

**38.** ಕಳ್ಳತನ ಮಾಡುವವನ ಮತ್ತು ಕಳ್ಳತನ ಮಾಡುವವಳ ಕೈಗಳನ್ನು ಕತ್ತರಿಸಿರಿ. ಅದು ಅವರು ಮಾಡಿದ ದುಷ್ಕರ್ಮಕ್ಕೆ ಪ್ರತಿಫಲವಾಗಿದೆ ಮತ್ತು ಅಲ್ಲಾಹನ ಕಡೆಯ ಶಿಕ್ಷೆಯಾಗಿದೆ. ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَٱلسَّارِقُ وَٱلسَّارِقَةُ فَٱقۡطَعُوٓاْ أَيۡدِيَهُمَا جَزَآءَۢ
بِمَا كَسَبَا نَكَٰلٗا مِّنَ ٱللَّهِۗ وَٱللَّهُ عَزِيزٌ
حَكِيمٞ ٣٨

---

**39.** ಆದರೆ ಅಕ್ರಮವೆಸಗಿದ ನಂತರ ಪಶ್ಚಾತ್ತಾಪಪಟ್ಟು ಸುಧಾರಿಸಿಕೊ-ಳ್ಳುವವರು ಯಾರೋ—ನಿಶ್ಚಯವಾಗಿಯೂ ಅಲ್ಲಾಹು ಅವರ ಪಶ್ಚಾತ್ತಾಪವನ್ನು ಸ್ವೀಕರಿಸುವನು. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

فَمَن تَابَ مِنۢ بَعۡدِ ظُلۡمِهِۦ وَأَصۡلَحَ فَإِنَّ ٱللَّهَ
يَتُوبُ عَلَيۡهِۚ إِنَّ ٱللَّهَ غَفُورٞ رَّحِيمٌ ٣٩

---

**40.** ಭೂಮ್ಯಾಕಾಶಗಳ ಆಧಿಪತ್ಯವು ಅಲ್ಲಾಹನಿಗೆ ಸೇರಿದ್ದೆಂದು ನಿಮಗೆ ತಿಳಿದಿಲ್ಲವೇ? ಅವನು ಇಚ್ಛಿಸುವವರಿಗೆ ಅವನು ಕ್ಷಮಿಸುತ್ತಾನೆ

أَلَمۡ تَعۡلَمۡ أَنَّ ٱللَّهَ لَهُۥ مُلۡكُ ٱلسَّمَٰوَٰتِ وَٱلۡأَرۡضِ
يُعَذِّبُ مَن يَشَآءُ وَيَغۡفِرُ لِمَن يَشَآءُۗ وَٱللَّهُ عَلَىٰ

---

[1] ವಸೀಲ ಎಂದರೆ ಗುರಿ ಸಾಧನೆಗಿರುವ ಮಾಧ್ಯಮ; ಅಥವಾ ಗುರಿಯ ಕಡೆಗೆ ಹತ್ತಿರಗೊಳಿಸುವ ಮಾಧ್ಯಮ. ಅಲ್ಲಾಹನಿಗೆ ಹತ್ತಿರಗೊಳಿಸುವ ಮಾಧ್ಯಮ ಎಂದರೆ ಅಲ್ಲಾಹು ಆದೇಶಿಸಿದ ಕಾರ್ಯಗಳನ್ನು ಮಾಡುವುದು ಮತ್ತು ಅವನು ವಿರೋಧಿಸಿದ ಕಾರ್ಯಗಳಿಂದ ದೂರವಿರುವುದು.

ಮತ್ತು ಅವನು ಇಚ್ಛಿಸುವವರನ್ನು ಶಿಕ್ಷಿಸುತ್ತಾನೆ. ಅಲ್ಲಾಹು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

كُلِّ شَيۡءٖ قَدِيرٌ ٤٠

---

41. ಓ ಸಂದೇಶವಾಹಕರೇ! ನಾವು ಸತ್ಯವಿಶ್ವಾಸಿಗಳೆಂದು ಬಾಯಿಂದ ಹೇಳುವವರು—ಆದರೆ ಹೃದಯಗಳಲ್ಲಿ ವಿಶ್ವಾಸವಿಲ್ಲದವರು (ಕಪಟವಿಶ್ವಾಸಿಗಳು) ಮತ್ತು ಸುಳ್ಳನ್ನು ಕಿವಿಗೊಟ್ಟು ಕೇಳುವ, ನಿಮ್ಮ ಬಳಿಗೆ ಬರದ ಜನರ ಮಾತುಗಳನ್ನು ಕಿವಿಗೊಟ್ಟು ಕೇಳುವ, ವಚನಗಳನ್ನು ಅದರ ಸ್ಥಾನದಿಂದ ವಿರೂಪಗೊಳಿಸುವ ಮತ್ತು ನಿಮಗೆ ಪ್ರವಾದಿಯ ಬಳಿ ಇದೇ ತೀರ್ಪು ಸಿಕ್ಕಿದರೆ ಸ್ವೀಕರಿಸಿರಿ, ಇಲ್ಲದಿದ್ದರೆ ಜಾಗರೂಕರಾಗಿರಿ ಎಂದು ಹೇಳುವ ಯಹೂದಿಗಳು ಸತ್ಯನಿಷೇಧದಲ್ಲಿ ತ್ವರೆ ಮಾಡುವುದನ್ನು ಕಂಡು ನೀವು ಬೇಸರಪಡಬೇಡಿ. ಅಲ್ಲಾಹು ಯಾರನ್ನು ನಾಶ ಮಾಡಲು ಬಯಸುತ್ತಾನೋ—ಅವನನ್ನು ಅಲ್ಲಾಹನಿಂದ ರಕ್ಷಿಸಲು ನಿಮಗೆ ಸಾಧ್ಯವಿಲ್ಲ. ಅಲ್ಲಾಹು ಅವರ ಹೃದಯಗಳನ್ನು ಶುದ್ಧೀಕರಿಸಲು ಬಯಸುವುದಿಲ್ಲ. ಅವರಿಗೆ ಇಹಲೋಕದಲ್ಲಿ ಅವಮಾನವಿದೆ ಮತ್ತು ಪರಲೋಕದಲ್ಲಿ ಕಠೋರ ಶಿಕ್ಷೆಯಿದೆ.

يَٰٓأَيُّهَا ٱلرَّسُولُ لَا يَحۡزُنكَ ٱلَّذِينَ يُسَٰرِعُونَ
فِي ٱلۡكُفۡرِ مِنَ ٱلَّذِينَ قَالُوٓاْ ءَامَنَّا بِأَفۡوَٰهِهِمۡ
وَلَمۡ تُؤۡمِن قُلُوبُهُمۡۛ وَمِنَ ٱلَّذِينَ هَادُواْۛ سَمَّٰعُونَ
لِلۡكَذِبِ سَمَّٰعُونَ لِقَوۡمٍ ءَاخَرِينَ لَمۡ يَأۡتُوكَۖ
يُحَرِّفُونَ ٱلۡكَلِمَ مِنۢ بَعۡدِ مَوَاضِعِهِۦۖ يَقُولُونَ إِنۡ
أُوتِيتُمۡ هَٰذَا فَخُذُوهُ وَإِن لَّمۡ تُؤۡتَوۡهُ فَٱحۡذَرُواْۚ
وَمَن يُرِدِ ٱللَّهُ فِتۡنَتَهُۥ فَلَن تَمۡلِكَ لَهُۥ مِنَ ٱللَّهِ
شَيۡـًٔاۚ أُوْلَٰٓئِكَ ٱلَّذِينَ لَمۡ يُرِدِ ٱللَّهُ أَن يُطَهِّرَ
قُلُوبَهُمۡۚ لَهُمۡ فِي ٱلدُّنۡيَا خِزۡيٞۖ وَلَهُمۡ فِي ٱلۡأٓخِرَةِ
عَذَابٌ عَظِيمٞ ٤١

---

42. ಅವರು ಸುಳ್ಳನ್ನು ಕಿವಿಗೊಟ್ಟು ಕೇಳುವವರು ಮತ್ತು ನಿಷಿದ್ಧ ಧನವನ್ನು ತಿನ್ನುವವರಾಗಿದ್ದಾರೆ. ಅವರು ನಿಮ್ಮ ಬಳಿಗೆ (ತೀರ್ಪಿಗಾಗಿ) ಬಂದರೆ ನೀವು ಅವರ ನಡುವೆ ತೀರ್ಪು ನೀಡಿರಿ ಅಥವಾ ಅವರನ್ನು ನಿರ್ಲಕ್ಷಿಸಿರಿ. ನೀವು ಅವರನ್ನು ನಿರ್ಲಕ್ಷಿಸಿದರೆ ಅವರು ನಿಮಗೆ ಯಾವುದೇ ತೊಂದರೆ ಮಾಡಲಾರರು. ಇನ್ನು ನೀವು ತೀರ್ಪು ನೀಡುವುದಾದರೆ ಅವರ ನಡುವೆ ನ್ಯಾಯಯುತವಾಗಿ ತೀರ್ಪು ನೀಡಿರಿ. ನಿಶ್ಚಯವಾಗಿಯೂ ನ್ಯಾಯಯುತವಾಗಿ ವರ್ತಿಸುವವರನ್ನು ಅಲ್ಲಾಹು ಇಷ್ಟಪಡುತ್ತಾನೆ.

سَمَّٰعُونَ لِلۡكَذِبِ أَكَّٰلُونَ لِلسُّحۡتِۚ فَإِن
جَآءُوكَ فَٱحۡكُم بَيۡنَهُمۡ أَوۡ أَعۡرِضۡ عَنۡهُمۡۖ
وَإِن تُعۡرِضۡ عَنۡهُمۡ فَلَن يَضُرُّوكَ شَيۡـًٔاۖ وَإِنۡ
حَكَمۡتَ فَٱحۡكُم بَيۡنَهُم بِٱلۡقِسۡطِۚ إِنَّ ٱللَّهَ
يُحِبُّ ٱلۡمُقۡسِطِينَ ٤٢

---

43. ಆದರೆ ಅವರ ಬಳಿ ತೌರಾತ್ ಇದ್ದು ಅದರಲ್ಲಿ ಅಲ್ಲಾಹನ ತೀರ್ಪು ಇರುವಾಗ ಅವರು (ಅದನ್ನು ಬಿಟ್ಟು) ತೀರ್ಪಿಗಾಗಿ ನಿಮ್ಮ ಬಳಿಗೆ ಬರುವುದು ಹೇಗೆ? ನಂತರ ಅದರ ಬಳಿಕವೂ ಅವರು ವಿಮುಖರಾಗುತ್ತಾರೆ. ಅವರು ಸತ್ಯವಿಶ್ವಾಸಿಗಳೇ ಅಲ್ಲ.

وَكَيۡفَ يُحَكِّمُونَكَ وَعِندَهُمُ ٱلتَّوۡرَىٰةُ فِيهَا
حُكۡمُ ٱللَّهِ ثُمَّ يَتَوَلَّوۡنَ مِنۢ بَعۡدِ ذَٰلِكَۚ وَمَآ
أُوْلَٰٓئِكَ بِٱلۡمُؤۡمِنِينَ ٤٣

---

44. ನಿಶ್ಚಯವಾಗಿಯೂ ನಾವು ತೌರಾತನ್ನು ಅವತೀರ್ಣಗೊಳಿ-ಸಿದ್ದೇವೆ. ಅದರಲ್ಲಿ ಸನ್ಮಾರ್ಗ ಮತ್ತು ಬೆಳಕಿದೆ. (ಅಲ್ಲಾಹನಿಗೆ) ಶರಣಾದ ಪ್ರವಾದಿಗಳು, ದೇವನಿಷ್ಠರು ಮತ್ತು ವಿದ್ವಾಂಸರು ಅದರಲ್ಲಿರುವಂತೆ ಯಹೂದಿಗಳ ನಡುವೆ ತೀರ್ಪು ನೀಡುತ್ತಿದ್ದರು.

إِنَّآ أَنزَلۡنَا ٱلتَّوۡرَىٰةَ فِيهَا هُدٗى وَنُورٞۚ يَحۡكُمُ
بِهَا ٱلنَّبِيُّونَ ٱلَّذِينَ أَسۡلَمُواْ لِلَّذِينَ هَادُواْ
وَٱلرَّبَّٰنِيُّونَ وَٱلۡأَحۡبَارُ بِمَا ٱسۡتُحۡفِظُواْ مِن

كِتَٰبِ ٱللَّهِ وَكَانُواْ عَلَيۡهِ شُهَدَآءَۚ فَلَا تَخۡشَوُاْ ٱلنَّاسَ وَٱخۡشَوۡنِ وَلَا تَشۡتَرُواْ بِـَٔايَٰتِي ثَمَنٗا قَلِيلٗاۚ وَمَن لَّمۡ يَحۡكُم بِمَآ أَنزَلَ ٱللَّهُ فَأُوْلَٰٓئِكَ هُمُ ٱلۡكَٰفِرُونَ ﴿٤٤﴾

ಏಕೆಂದರೆ ಅಲ್ಲಾಹನ ಗ್ರಂಥದ ಸಂರಕ್ಷಣೆಯನ್ನು ಅವರಿಗೆ ವಹಿಸಿ-ಕೊಡಲಾಗಿತ್ತು. ಅವರು ಅದಕ್ಕೆ ಸಾಕ್ಷಿಗಳಾಗಿದ್ದರು. ಆದ್ದರಿಂದ ನೀವು ಜನರನ್ನು ಭಯಪಡಬೇಡಿ. ನನ್ನನ್ನು ಭಯಪಡಿರಿ. ನನ್ನ ವಚನಗಳನ್ನು ಕೀಳು ದರಕ್ಕೆ ಮಾರಾಟ ಮಾಡಬೇಡಿ. ಅಲ್ಲಾಹು ಅವತೀರ್ಣಗೊಳಿಸಿದ್ದಕ್ಕೆ ಅನುಗುಣವಾಗಿ ಯಾರು ತೀರ್ಪು ನೀಡುವುದಿಲ್ಲವೋ ಅವರೇ ಸತ್ಯನಿಷೇಧಿಗಳು.

---

وَكَتَبۡنَا عَلَيۡهِمۡ فِيهَآ أَنَّ ٱلنَّفۡسَ بِٱلنَّفۡسِ وَٱلۡعَيۡنَ بِٱلۡعَيۡنِ وَٱلۡأَنفَ بِٱلۡأَنفِ وَٱلۡأُذُنَ بِٱلۡأُذُنِ وَٱلسِّنَّ بِٱلسِّنِّ وَٱلۡجُرُوحَ قِصَاصٞۚ فَمَن تَصَدَّقَ بِهِۦ فَهُوَ كَفَّارَةٞ لَّهُۥۚ وَمَن لَّمۡ يَحۡكُم بِمَآ أَنزَلَ ٱللَّهُ فَأُوْلَٰٓئِكَ هُمُ ٱلظَّٰلِمُونَ ﴿٤٥﴾

45. ನಾವು ಅವರಿಗೆ ಅದರಲ್ಲಿ (ತೌರಾತ್‌ನಲ್ಲಿ) ಜೀವಕ್ಕೆ ಜೀವ, ಕಣ್ಣಿಗೆ ಕಣ್ಣು, ಮೂಗಿಗೆ ಮೂಗು, ಕಿವಿಗೆ ಕಿವಿ, ಹಲ್ಲಿಗೆ ಹಲ್ಲು ಮತ್ತು ಗಾಯಗಳಿಗೆ ಪ್ರತೀಕಾರ ಪಡೆಯಬೇಕೆಂದು ಆದೇಶಿಸಿದ್ದೇವೆ. ಯಾರಾದರೂ (ಪ್ರತೀಕಾರ ಪಡೆಯದೆ) ಕ್ಷಮಿಸಿದರೆ, ಅದು ಅವನಿಗೆ ಪರಿಹಾರವಾಗಿದೆ. ಅಲ್ಲಾಹು ಅವತೀರ್ಣಗೊಳಿಸಿದ್ದಕ್ಕೆ ಅನುಗುಣವಾಗಿ ಯಾರು ತೀರ್ಪು ನೀಡುವುದಿಲ್ಲವೋ ಅವರೇ ಅಕ್ರಮಿಗಳು.

---

وَقَفَّيۡنَا عَلَىٰٓ ءَاثَٰرِهِم بِعِيسَى ٱبۡنِ مَرۡيَمَ مُصَدِّقٗا لِّمَا بَيۡنَ يَدَيۡهِ مِنَ ٱلتَّوۡرَىٰةِۖ وَءَاتَيۡنَٰهُ ٱلۡإِنجِيلَ فِيهِ هُدٗى وَنُورٞ وَمُصَدِّقٗا لِّمَا بَيۡنَ يَدَيۡهِ مِنَ ٱلتَّوۡرَىٰةِ وَهُدٗى وَمَوۡعِظَةٗ لِّلۡمُتَّقِينَ ﴿٤٦﴾

46. ನಂತರ ಅವರ ಹಿಂದೆಯೇ ನಾವು ಮರ್ಯಮರ ಮಗ ಈಸಾರನ್ನು—ತನ್ನ ಮುಂದಿರುವ ತೌರಾತನ್ನು ದೃಢೀಕರಿಸುವು-ದಕ್ಕಾಗಿ ಕಳುಹಿಸಿದೆವು. ನಾವು ಅವರಿಗೆ ಇಂಜೀಲನ್ನು ನೀಡಿದೆವು. ಅದರಲ್ಲಿ ಸನ್ಮಾರ್ಗ ಮತ್ತು ಬೆಳಕಿತ್ತು. ಅದು ತನ್ನ ಮುಂದಿರುವ ತೌರಾತನ್ನು ದೃಢೀಕರಿಸುವ ಗ್ರಂಥವಾಗಿದೆ ಮತ್ತು ದೇವಭಯವು-ಳ್ಳವರಿಗೆ ಮಾರ್ಗದರ್ಶನ ಮತ್ತು ಹಿತೋಪದೇಶವಾಗಿದೆ.

---

وَلۡيَحۡكُمۡ أَهۡلُ ٱلۡإِنجِيلِ بِمَآ أَنزَلَ ٱللَّهُ فِيهِۚ وَمَن لَّمۡ يَحۡكُم بِمَآ أَنزَلَ ٱللَّهُ فَأُوْلَٰٓئِكَ هُمُ ٱلۡفَٰسِقُونَ ﴿٤٧﴾

47. ಇಂಜೀಲ್‌ನ ಅನುಯಾಯಿಗಳು ಅಲ್ಲಾಹು ಅದರಲ್ಲಿ ಅವತೀ-ರ್ಣಗೊಳಿಸಿದ್ದಕ್ಕೆ ಅನುಗುಣವಾಗಿ ತೀರ್ಪು ನೀಡಲಿ.[1] ಅಲ್ಲಾಹು ಅವತೀರ್ಣಗೊಳಿಸಿದ್ದಕ್ಕೆ ಅನುಗುಣವಾಗಿ ಯಾರು ತೀರ್ಪು ನೀಡುವುದಿಲ್ಲವೋ ಅವರೇ ದುಷ್ಕರ್ಮಿಗಳು.

---

وَأَنزَلۡنَآ إِلَيۡكَ ٱلۡكِتَٰبَ بِٱلۡحَقِّ مُصَدِّقٗا لِّمَا بَيۡنَ يَدَيۡهِ مِنَ ٱلۡكِتَٰبِ وَمُهَيۡمِنًا عَلَيۡهِۖ فَٱحۡكُم بَيۡنَهُم بِمَآ أَنزَلَ ٱللَّهُۖ وَلَا تَتَّبِعۡ أَهۡوَآءَهُمۡ عَمَّا جَآءَكَ مِنَ ٱلۡحَقِّۚ لِكُلّٖ جَعَلۡنَا مِنكُمۡ

48. (ಪ್ರವಾದಿಯವರೇ) ನಿಮಗೂ ನಾವು ಗ್ರಂಥವನ್ನು ಸತ್ಯಸಹಿತ ಅವತೀರ್ಣಗೊಳಿಸಿದ್ದೇವೆ. ಅದು ತನ್ನ ಮುಂದಿರುವ ಗ್ರಂಥಗಳನ್ನು ದೃಢೀಕರಿಸುತ್ತದೆ ಮತ್ತು ಅವುಗಳನ್ನು ಸಂರಕ್ಷಿಸುತ್ತದೆ. ಆದ್ದರಿಂದ ಅಲ್ಲಾಹು ಅವತೀರ್ಣಗೊಳಿಸಿದ್ದಕ್ಕೆ ಅನುಗುಣವಾಗಿ ನೀವು ಅವರ ನಡುವೆ ತೀರ್ಪು ನೀಡಿರಿ. ನಿಮಗೆ ಅವತೀರ್ಣವಾದ ಸತ್ಯವನ್ನು

---

[1] ಈಸಾರ (ಅವರ ಮೇಲೆ ಶಾಂತಿಯಿರಲಿ) ಪ್ರವಾದಿತ್ವದ ಅವಧಿಯು ಊರ್ಜಿತದಲ್ಲಿದ್ದ ಕಾಲದಲ್ಲಿ ಅವರ ಅನುಯಾಯಿಗಳು ಇಂಜೀಲ್‌ನ-ಲ್ಲಿರುವ ನಿಯಮಗಳ ಪ್ರಕಾರ ತೀರ್ಪು ನೀಡಬೇಕಾಗಿತ್ತು. ಆದರೆ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರವರು ಪ್ರವಾದಿಯಾದಾಗ ಈಸಾರ (ಅವರ ಮೇಲೆ ಶಾಂತಿಯಿರಲಿ) ಪ್ರವಾದಿತ್ವ ಮುಗಿಯುತ್ತದೆ ಮತ್ತು ಇಂಜೀಲ್‌ನ ನಿಯಮಗಳು ರದ್ದಾಗುತ್ತವೆ. ನಂತರ ಅವರ ಅನುಯಾಯಿಗಳು ಪ್ರವಾದಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರಿಗೆ ಅವತೀರ್ಣವಾದ ಕುರ್‌ಆನ್ ಪ್ರಕಾರ ತೀರ್ಪು ನೀಡಬೇಕಾಗಿದೆ.

ತೊರೆದು ಅವರ ಸ್ವೇಚ್ಛೆಗಳನ್ನು ಹಿಂಬಾಲಿಸಬೇಡಿ. ನಿಮ್ಮಲ್ಲಿ ಪ್ರತಿಯೊಂದು ಸಮುದಾಯಕ್ಕೂ ನಾವು ಒಂದು ಧರ್ಮಶಾಸ್ತ್ರ ಮತ್ತು ಕರ್ಮಮಾರ್ಗವನ್ನು ನಿಶ್ಚಯಿಸಿದ್ದೇವೆ. ಅಲ್ಲಾಹು ಇಚ್ಛಿಸಿದ್ದರೆ ನಿಮ್ಮೆಲ್ಲರನ್ನೂ ಒಂದೇ ಸಮುದಾಯವಾಗಿ ಮಾಡುತ್ತಿದ್ದನು. ಆದರೆ ಅವನು ನಿಮಗೆ ಏನು ನೀಡಿದ್ದಾನೋ ಅದರಲ್ಲಿ ನಿಮ್ಮನ್ನು ಪರೀಕ್ಷಿಸಲು (ಇಚ್ಛಿಸುತ್ತಾನೆ). ಆದ್ದರಿಂದ ನೀವು ಸತ್ಕರ್ಮಗ-ಳಲ್ಲಿ ತ್ವರೆಯಿಂದ ಮುನ್ನುಗ್ಗಿರಿ. ನೀವೆಲ್ಲರೂ ಅಲ್ಲಾಹನ ಬಳಿಗೇ ಮರಳಬೇಕಾಗಿದೆ. ಆಗ ನೀವು ಭಿನ್ನಮತ ತಳೆದ ವಿಷಯಗಳ ಬಗ್ಗೆ ಅವನು ನಿಮಗೆ ತಿಳಿಸಿಕೊಡುವನು.

شِرۡعَةٗ وَمِنۡهَاجٗاۚ وَلَوۡ شَآءَ ٱللَّهُ لَجَعَلَكُمۡ
أُمَّةٗ وَٰحِدَةٗ وَلَٰكِن لِّيَبۡلُوَكُمۡ فِي مَآ ءَاتَىٰكُمۡۖ
فَٱسۡتَبِقُواْ ٱلۡخَيۡرَٰتِۚ إِلَى ٱللَّهِ مَرۡجِعُكُمۡ جَمِيعٗا
فَيُنَبِّئُكُم بِمَا كُنتُمۡ فِيهِ تَخۡتَلِفُونَ ٤٨

49. ಅಲ್ಲಾಹು ಅವತೀರ್ಣಗೊಳಿಸಿದ್ದಕ್ಕೆ ಅನುಗುಣವಾಗಿ ಅವರ ನಡುವೆ ತೀರ್ಪು ನೀಡಿರಿ. ಅವರ ಸ್ವೇಚ್ಛೆಗಳನ್ನು ಹಿಂಬಾಲಿಸಬೇಡಿ. ಅಲ್ಲಾಹು ನಿಮಗೆ ಅವತೀರ್ಣಗೊಳಿಸಿದ ಯಾವುದಾದರೂ ಆದೇಶದಿಂದ ಅವರು ನಿಮ್ಮನ್ನು ತಪ್ಪಿಸಿಬಿಡುವ ಬಗ್ಗೆ ಜಾಗರೂಕರಾಗಿರಿ. ಅವರೇನಾದರೂ ವಿಮುಖರಾದರೆ, ತಿಳಿಯಿರಿ! ಅವರ ಕೆಲವು ಪಾಪಗಳ ಕಾರಣದಿಂದ ಅಲ್ಲಾಹು ಅವರನ್ನು ಶಿಕ್ಷಿಸಲು ಬಯಸುತ್ತಿದ್ದಾನೆ. ನಿಶ್ಚಯವಾಗಿಯೂ ಮನುಷ್ಯರಲ್ಲಿ ಹೆಚ್ಚಿನವರೂ ದುಷ್ಕರ್ಮಿಗಳಾಗಿದ್ದಾರೆ.

وَأَنِ ٱحۡكُم بَيۡنَهُم بِمَآ أَنزَلَ ٱللَّهُ وَلَا تَتَّبِعۡ
أَهۡوَآءَهُمۡ وَٱحۡذَرۡهُمۡ أَن يَفۡتِنُوكَ عَنۢ بَعۡضِ مَآ
أَنزَلَ ٱللَّهُ إِلَيۡكَۖ فَإِن تَوَلَّوۡاْ فَٱعۡلَمۡ أَنَّمَا يُرِيدُ
ٱللَّهُ أَن يُصِيبَهُم بِبَعۡضِ ذُنُوبِهِمۡۗ وَإِنَّ كَثِيرٗا
مِّنَ ٱلنَّاسِ لَفَٰسِقُونَ ٤٩

50. ಅವರು ಅಜ್ಞಾನಕಾಲದ ತೀರ್ಪನ್ನು ಬಯಸುತ್ತಿದ್ದಾರೆಯೇ? ದೃಢವಿಶ್ವಾಸವಿಡುವ ಜನರಿಗೆ ಅಲ್ಲಾಹನಿಗಿಂತಲೂ ಉತ್ತಮವಾಗಿ ತೀರ್ಪು ನೀಡುವವನು ಯಾರು?

أَفَحُكۡمَ ٱلۡجَٰهِلِيَّةِ يَبۡغُونَۚ وَمَنۡ أَحۡسَنُ مِنَ
ٱللَّهِ حُكۡمٗا لِّقَوۡمٖ يُوقِنُونَ ٥٠

51. ಓ ಸತ್ಯವಿಶ್ವಾಸಿಗಳೇ! ಯಹೂದಿಗಳನ್ನು ಮತ್ತು ಕ್ರೈಸ್ತರನ್ನು ಆಪ್ತಮಿತ್ರರಾಗಿ ಸ್ವೀಕರಿಸಬೇಡಿ. ಅವರು ಪರಸ್ಪರ ಆಪ್ತಮಿ-ತ್ರರಾಗಿದ್ದಾರೆ. ನಿಮ್ಮಲ್ಲಿ ಯಾರು ಅವರನ್ನು ಆಪ್ತಮಿತ್ರರಾಗಿ ಸ್ವೀಕರಿಸುತ್ತಾನೋ ಅವನು ಅವರಲ್ಲಿ ಸೇರುತ್ತಾನೆ. ನಿಶ್ಚಯವಾಗಿಯೂ ಅಕ್ರಮಿಗಳಾದ ಜನರಿಗೆ ಅಲ್ಲಾಹು ಸನ್ಮಾರ್ಗ ತೋರಿಸುವುದಿಲ್ಲ.

يَٰٓأَيُّهَا ٱلَّذِينَ ءَامَنُواْ لَا تَتَّخِذُواْ ٱلۡيَهُودَ
وَٱلنَّصَٰرَىٰٓ أَوۡلِيَآءَۘ بَعۡضُهُمۡ أَوۡلِيَآءُ بَعۡضٖۚ وَمَن
يَتَوَلَّهُم مِّنكُمۡ فَإِنَّهُۥ مِنۡهُمۡۗ إِنَّ ٱللَّهَ لَا يَهۡدِي
ٱلۡقَوۡمَ ٱلظَّٰلِمِينَ ٥١

52. ಹೃದಯಗಳಲ್ಲಿ ರೋಗವಿರುವವರು (ಕಪಟವಿಶ್ವಾ-ಸಿಗಳು) ಅವರೊಡನೆ ಸೇರಲು ತ್ವರೆ ಮಾಡುವುದನ್ನು ನೀವು ಕಾಣುವಿರಿ. ಅವರು ಹೇಳುತ್ತಾರೆ: “ನಮಗೇನಾದರೂ ಆಪತ್ತು ಸಂಭವಿಸಬಹುದೆಂದು ನಮಗೆ ಭಯವಾಗುತ್ತಿದೆ.” ಆದರೆ ಅಲ್ಲಾಹು ನಿಮಗೆ ಗೆಲುವನ್ನು ಅಥವಾ ತನ್ನ ಕಡೆಯ ಏನಾದರೂ ಆದೇಶವನ್ನು ನೀಡಬಹುದು. ಆಗ ಅವರು ತಮ್ಮ ಮನಸ್ಸಿನಲ್ಲಿ

فَتَرَى ٱلَّذِينَ فِي قُلُوبِهِم مَّرَضٞ يُسَٰرِعُونَ فِيهِمۡ
يَقُولُونَ نَخۡشَىٰٓ أَن تُصِيبَنَا دَآئِرَةٞۚ فَعَسَى ٱللَّهُ
أَن يَأۡتِيَ بِٱلۡفَتۡحِ أَوۡ أَمۡرٖ مِّنۡ عِندِهِۦ فَيُصۡبِحُواْ
عَلَىٰ مَآ أَسَرُّواْ فِيٓ أَنفُسِهِمۡ نَٰدِمِينَ ٥٢

ರಹಸ್ಯವಾಗಿಟ್ಟ ವಿಚಾರಗಳನ್ನು ನೆನೆದು ವಿಷಾದಪಡುವರು.

53. ಸತ್ಯವಿಶ್ವಾಸಿಗಳು ಹೇಳುವರು: “ನಾವು ನಿಮ್ಮ ಜೊತೆಯಲ್ಲೇ ಇದ್ದೇವೆ ಎಂದು ಅಲ್ಲಾಹನ ಮೇಲೆ ಬಲವಾಗಿ ಆಣೆ ಮಾಡಿದವರು ಇವರೇ ಏನು?” ಅವರ ಕರ್ಮಗಳು ನಿಷ್ಫಲವಾದವು ಮತ್ತು ಅವರು ನಷ್ಟಹೊಂದಿದವರಾಗಿ ಬಿಟ್ಟರು.

وَيَقُولُ ٱلَّذِينَ ءَامَنُوٓاْ أَهَـٰٓؤُلَآءِ ٱلَّذِينَ أَقۡسَمُواْ بِٱللَّهِ جَهۡدَ أَيۡمَـٰنِهِمۡ إِنَّهُمۡ لَمَعَكُمۡۚ حَبِطَتۡ أَعۡمَـٰلُهُمۡ فَأَصۡبَحُواْ خَـٰسِرِينَ ﴿٥٣﴾

54. ಓ ಸತ್ಯವಿಶ್ವಾಸಿಗಳೇ! ನಿಮ್ಮಲ್ಲಿ ಯಾರಾದರೂ ಧರ್ಮಪರಿತ್ಯಾಗ ಮಾಡಿದರೆ, ಸದ್ಯವೇ ಅಲ್ಲಾಹು (ನಿಮ್ಮ ಬದಲಿಗೆ) ಬೇರೆ ಜನರನ್ನು ತರುವನು. ಅವನು ಅವರನ್ನು ಪ್ರೀತಿಸುವನು ಮತ್ತು ಅವರು ಅವನನ್ನು ಪ್ರೀತಿಸುವರು. ಅವರು ಸತ್ಯವಿಶ್ವಾಸಿಗಳ ಮುಂದೆ ದೈನ್ಯತೆ ಮತ್ತು ಸತ್ಯನಿಷೇಧಿಗಳ ಮುಂದೆ ಪೌರುಷವನ್ನು ಪ್ರಕಟಿಸುವರು. ಅವರು ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡುವರು ಮತ್ತು ಆಕ್ಷೇಪಿಸುವವನ ಯಾವುದೇ ಆಕ್ಷೇಪಕ್ಕೂ ಭಯಪಡಲಾರರು. ಅದು ಅಲ್ಲಾಹನ ಔದಾರ್ಯವಾಗಿದೆ. ಅವನು ಇಚ್ಛಿಸುವವರಿಗೆ ಅದನ್ನು ನೀಡುತ್ತಾನೆ. ಅಲ್ಲಾಹು ವಿಶಾಲನು ಮತ್ತು ಸರ್ವಜ್ಞನಾಗಿದ್ದಾನೆ.[1]

يَـٰٓأَيُّهَا ٱلَّذِينَ ءَامَنُواْ مَن يَرۡتَدَّ مِنكُمۡ عَن دِينِهِۦ فَسَوۡفَ يَأۡتِي ٱللَّهُ بِقَوۡمٖ يُحِبُّهُمۡ وَيُحِبُّونَهُۥٓ أَذِلَّةٍ عَلَى ٱلۡمُؤۡمِنِينَ أَعِزَّةٍ عَلَى ٱلۡكَٰفِرِينَ يُجَٰهِدُونَ فِي سَبِيلِ ٱللَّهِ وَلَا يَخَافُونَ لَوۡمَةَ لَآئِمٖۚ ذَٰلِكَ فَضۡلُ ٱللَّهِ يُؤۡتِيهِ مَن يَشَآءُۚ وَٱللَّهُ وَٰسِعٌ عَلِيمٌ ﴿٥٤﴾

55. ಅಲ್ಲಾಹು, ಅವನ ಸಂದೇಶವಾಹಕರು ಮತ್ತು ನಮಾಝ್ ಸಂಸ್ಥಾಪಿಸುವ, ಝಕಾತ್ ನೀಡುವ ಹಾಗೂ ಭಯಭಕ್ತಿಯಿಂದ ತಲೆಬಾಗುವ ಸತ್ಯವಿಶ್ವಾಸಿಗಳೇ ನಿಮ್ಮ ಆಪ್ತಮಿತ್ರರು.

إِنَّمَا وَلِيُّكُمُ ٱللَّهُ وَرَسُولُهُۥ وَٱلَّذِينَ ءَامَنُواْ ٱلَّذِينَ يُقِيمُونَ ٱلصَّلَوٰةَ وَيُؤۡتُونَ ٱلزَّكَوٰةَ وَهُمۡ رَٰكِعُونَ ﴿٥٥﴾

56. ಅಲ್ಲಾಹನನ್ನು, ಅವನ ಸಂದೇಶವಾಹಕರನ್ನು ಮತ್ತು ಸತ್ಯವಿಶ್ವಾಸಿಗಳನ್ನು ಯಾರು ಆಪ್ತಮಿತ್ರರಾಗಿ ಸ್ವೀಕರಿಸುತ್ತಾರೋ— ನಿಶ್ಚಯವಾಗಿಯೂ ಅಲ್ಲಾಹನ ಪಕ್ಷದವರೇ ವಿಜಯಿಗಳು.

وَمَن يَتَوَلَّ ٱللَّهَ وَرَسُولَهُۥ وَٱلَّذِينَ ءَامَنُواْ فَإِنَّ حِزۡبَ ٱللَّهِ هُمُ ٱلۡغَٰلِبُونَ ﴿٥٦﴾

57. ಓ ಸತ್ಯವಿಶ್ವಾಸಿಗಳೇ! ನಿಮಗಿಂತ ಮೊದಲು ಗ್ರಂಥ ನೀಡಲಾದವರಲ್ಲಿ (ಯಹೂದಿಗಳು ಮತ್ತು ಕ್ರೈಸ್ತರಲ್ಲಿ) ನಿಮ್ಮ ಧರ್ಮವನ್ನು ತಮಾಷೆ ಮತ್ತು ಆಟದ ವಸ್ತುವಾಗಿ ಸ್ವೀಕರಿಸಿದವರನ್ನು ಮತ್ತು ಸತ್ಯನಿಷೇಧಿಗಳನ್ನು ನೀವು ಆಪ್ತಮಿತ್ರರಾಗಿ ಸ್ವೀಕರಿಸಬೇಡಿ. ನೀವು ಸತ್ಯವಿಶ್ವಾಸಿಗಳಾಗಿದ್ದರೆ ಅಲ್ಲಾಹನನ್ನು ಭಯಪಡಿರಿ.

يَـٰٓأَيُّهَا ٱلَّذِينَ ءَامَنُواْ لَا تَتَّخِذُواْ ٱلَّذِينَ ٱتَّخَذُواْ دِينَكُمۡ هُزُوٗا وَلَعِبٗا مِّنَ ٱلَّذِينَ أُوتُواْ ٱلۡكِتَٰبَ مِن قَبۡلِكُمۡ وَٱلۡكُفَّارَ أَوۡلِيَآءَۚ وَٱتَّقُواْ ٱللَّهَ إِن كُنتُم مُّؤۡمِنِينَ ﴿٥٧﴾

[1] ಇಸ್ಲಾಂ ಧರ್ಮದ ಅಸ್ತಿತ್ವವು ನಿಮ್ಮನ್ನು ಅವಲಂಬಿಸಿಲ್ಲ. ನೀವು ಧರ್ಮಪರಿತ್ಯಾಗ ಮಾಡಿದರೆ ಅಲ್ಲಾಹು ನಿಮ್ಮ ಸ್ಥಾನದಲ್ಲಿ ಬೇರೆ ಜನರನ್ನು ತರುವನು. ಅವರಿಗೆ ನಾಲ್ಕು ವಿಶೇಷತೆಗಳಿರುವುದು. 1. ಅವರನ್ನು ಅಲ್ಲಾಹು ಪ್ರೀತಿಸುತ್ತಾನೆ ಮತ್ತು ಅವರು ಅಲ್ಲಾಹನನ್ನು ಪ್ರೀತಿಸುತ್ತಾರೆ. 2. ಅವರು ಸತ್ಯವಿಶ್ವಾಸಿಗಳೊಂದಿಗೆ ಮೃದುವಾಗಿ ವರ್ತಿಸುತ್ತಾರೆ ಮತ್ತು ಸತ್ಯನಿಷೇಧಿಗಳೊಂದಿಗೆ ಕಠೋರವಾಗಿ ವರ್ತಿಸುತ್ತಾರೆ. 3. ಅವರು ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡುತ್ತಾರೆ. 4. ಅವರು ಅಲ್ಲಾಹನ ವಿಷಯದಲ್ಲಿ ಯಾರನ್ನೂ ಭಯಪಡುವುದಿಲ್ಲ.

58. ನೀವು ನಮಾಝ್‌ಗಾಗಿ ಕರೆ ನೀಡಿದರೆ, ಅವರು ಅದನ್ನು ತಮಾಷೆ ಮತ್ತು ಆಟದ ವಸ್ತುವಾಗಿ ಸ್ವೀಕರಿಸುತ್ತಾರೆ. ಅದೇಕೆಂದರೆ ಅವರು ಬುದ್ಧಿಯಿಲ್ಲದ ಜನರಾಗಿದ್ದಾರೆ.

وَإِذَا نَادَيۡتُمۡ إِلَى ٱلصَّلَوٰةِ ٱتَّخَذُوهَا هُزُوٗا وَلَعِبٗاۚ ذَٰلِكَ بِأَنَّهُمۡ قَوۡمٞ لَّا يَعۡقِلُونَ ٥٨

59. ಹೇಳಿರಿ: "ಓ ಗ್ರಂಥದವರೇ! ನಾವು ಅಲ್ಲಾಹನಲ್ಲಿ, ನಮಗೆ ಅವತೀರ್ಣವಾದ ಗ್ರಂಥದಲ್ಲಿ ಮತ್ತು ನಮಗಿಂತ ಮೊದಲು ಅವತೀರ್ಣವಾದ ಗ್ರಂಥದಲ್ಲಿ ವಿಶ್ವಾಸವಿಟ್ಟಿದ್ದೇವೆಂಬ ಕಾರಣದಿಂದ ಮತ್ತು ನಿಮ್ಮಲ್ಲಿ ಹೆಚ್ಚಿನವರೂ ದುಷ್ಕರ್ಮಿಗಳಾ-ಗಿರುವ ಕಾರಣದಿಂದ ನೀವು ನಮ್ಮನ್ನು ದ್ವೇಷಿಸುತ್ತೀರಾ?"

قُلۡ يَٰٓأَهۡلَ ٱلۡكِتَٰبِ هَلۡ تَنقِمُونَ مِنَّآ إِلَّآ أَنۡ ءَامَنَّا بِٱللَّهِ وَمَآ أُنزِلَ إِلَيۡنَا وَمَآ أُنزِلَ مِن قَبۡلُ وَأَنَّ أَكۡثَرَكُمۡ فَٰسِقُونَ ٥٩

60. ಹೇಳಿರಿ: "ಅಲ್ಲಾಹನ ಬಳಿ ಅದಕ್ಕಿಂತಲೂ ಕೆಟ್ಟ ಪ್ರತಿಫಲವನ್ನು ಹೊಂದಿರುವವರ ಬಗ್ಗೆ ನಾನು ನಿಮಗೆ ತಿಳಿಸಿಕೊಡಲೇ? ಯಾರನ್ನು ಅಲ್ಲಾಹು ಶಪಿಸಿದನೋ, ಯಾರ ಮೇಲೆ ಅವನು ಸಿಟ್ಟಾದನೋ, ಯಾವ ಗುಂಪಿಗೆ ಸೇರಿದವರನ್ನು ಅವನು ಕಪಿಗಳನ್ನಾಗಿ ಮತ್ತು ಹಂದಿಗಳನ್ನಾಗಿ ಮಾಡಿದನೋ, ಯಾರು ಮಿಥ್ಯ ದೇವರುಗಳನ್ನು ಆರಾಧಿಸಿದರೋ, ಅವರೇ ಅತ್ಯಂತ ತುಚ್ಛ ಸ್ಥಾನದಲ್ಲಿರುವವರು ಮತ್ತು ನೇರಮಾರ್ಗದಿಂದ ಅತಿಯಾಗಿ ತಪ್ಪಿಹೋದವರು."

قُلۡ هَلۡ أُنَبِّئُكُم بِشَرّٖ مِّن ذَٰلِكَ مَثُوبَةً عِندَ ٱللَّهِۚ مَن لَّعَنَهُ ٱللَّهُ وَغَضِبَ عَلَيۡهِ وَجَعَلَ مِنۡهُمُ ٱلۡقِرَدَةَ وَٱلۡخَنَازِيرَ وَعَبَدَ ٱلطَّٰغُوتَۚ أُوْلَٰٓئِكَ شَرّٞ مَّكَانٗا وَأَضَلُّ عَن سَوَآءِ ٱلسَّبِيلِ ٦٠

61. ನಿಮ್ಮ ಬಳಿ ಬಂದಾಗ, ಅವರು ಹೇಳುತ್ತಾರೆ: "ನಾವು ವಿಶ್ವಾ-ಸವಿಟ್ಟಿದ್ದೇವೆ." ವಾಸ್ತವವಾಗಿ ಅವರು ಸತ್ಯನಿಷೇಧದೊಂದಿಗೇ ಬಂದಿದ್ದರು ಮತ್ತು ಅವರು ಸತ್ಯನಿಷೇಧದೊಂದಿಗೇ ಹೊರಟುಹೋದರು. ಅವರು ಅಡಗಿಸಿಡುವ ವಿಷಯಗಳನ್ನು ಅಲ್ಲಾಹು ಬಹಳ ಚೆನ್ನಾಗಿ ತಿಳಿದಿದ್ದಾನೆ.

وَإِذَا جَآءُوكُمۡ قَالُوٓاْ ءَامَنَّا وَقَد دَّخَلُواْ بِٱلۡكُفۡرِ وَهُمۡ قَدۡ خَرَجُواْ بِهِۦۚ وَٱللَّهُ أَعۡلَمُ بِمَا كَانُواْ يَكۡتُمُونَ ٦١

62. ಅವರಲ್ಲಿ ಹೆಚ್ಚಿನವರೂ ಪಾಪಗಳಲ್ಲಿ, ಅತಿಕ್ರಮಗಳಲ್ಲಿ ಮತ್ತು ನಿಷಿದ್ಧ ಧನವನ್ನು ತಿನ್ನುವುದರಲ್ಲಿ ತ್ವರೆ ಮಾಡುವುದನ್ನು ನೀವು ಕಾಣುವಿರಿ. ಅವರು ಮಾಡುವ ಕರ್ಮಗಳು ಬಹಳ ನಿಕೃಷ್ಟವಾಗಿವೆ!

وَتَرَىٰ كَثِيرٗا مِّنۡهُمۡ يُسَٰرِعُونَ فِي ٱلۡإِثۡمِ وَٱلۡعُدۡوَٰنِ وَأَكۡلِهِمُ ٱلسُّحۡتَۚ لَبِئۡسَ مَا كَانُواْ يَعۡمَلُونَ ٦٢

63. ಅವರು ಕೆಟ್ಟ ಮಾತುಗಳನ್ನು ಹೇಳುವುದನ್ನು ಮತ್ತು ನಿಷಿದ್ಧ ಧನ ತಿನ್ನುವುದನ್ನು ಅವರಲ್ಲಿರುವ ದೇವನಿಷ್ಠರು ಮತ್ತು ವಿದ್ವಾಂಸರು ಏಕೆ ವಿರೋಧಿಸುವುದಿಲ್ಲ? ಅವರು ಮಾಡುವ ಕೆಲಸಗಳು ಬಹಳ ನಿಕೃಷ್ಟವಾಗಿವೆ.

لَوۡلَا يَنۡهَىٰهُمُ ٱلرَّبَّٰنِيُّونَ وَٱلۡأَحۡبَارُ عَن قَوۡلِهِمُ ٱلۡإِثۡمَ وَأَكۡلِهِمُ ٱلسُّحۡتَۚ لَبِئۡسَ مَا كَانُواْ يَصۡنَعُونَ ٦٣

64. "ಅಲ್ಲಾಹನ ಕೈಗಳನ್ನು ಸಂಕೋಲೆಯಿಂದ ಬಂಧಿಸಲಾಗಿದೆ"

وَقَالَتِ ٱلۡيَهُودُ يَدُ ٱللَّهِ مَغۡلُولَةٌۚ غُلَّتۡ أَيۡدِيهِمۡ

وَلُعِنُواْ بِمَا قَالُواْۘ بَلۡ يَدَاهُ مَبۡسُوطَتَانِ يُنفِقُ
كَيۡفَ يَشَآءُۚ وَلَيَزِيدَنَّ كَثِيرٗا مِّنۡهُم مَّآ أُنزِلَ
إِلَيۡكَ مِن رَّبِّكَ طُغۡيَٰنٗا وَكُفۡرٗاۚ وَأَلۡقَيۡنَا بَيۡنَهُمُ
ٱلۡعَدَٰوَةَ وَٱلۡبَغۡضَآءَ إِلَىٰ يَوۡمِ ٱلۡقِيَٰمَةِۚ كُلَّمَآ أَوۡقَدُواْ
نَارٗا لِّلۡحَرۡبِ أَطۡفَأَهَا ٱللَّهُۚ وَيَسۡعَوۡنَ فِي ٱلۡأَرۡضِ
فَسَادٗاۚ وَٱللَّهُ لَا يُحِبُّ ٱلۡمُفۡسِدِينَ ٦٤

ಎಂದು ಯಹೂದಿಗಳು ಹೇಳಿದರು.[1] ಅವರ ಕೈಗಳನ್ನೇ ಸಂಕೋಲೆಯಿಂದ ಬಂಧಿಸಲಾಗಿದೆ ಮತ್ತು ಅವರ ಈ ಮಾತಿನಿಂದಾಗಿ ಅವರು ಅಲ್ಲಾಹನ ಶಾಪಕ್ಕೆ ಗುರಿಯಾಗಿದ್ದಾರೆ. ಅಲ್ಲ, ವಾಸ್ತವವಾಗಿ ಅಲ್ಲಾಹನ ಎರಡು ಕೈಗಳೂ ಚಾಚಿಕೊಂಡಿವೆ. ಅವನು ಇಚ್ಛಿಸುವಂತೆ ಅವನು ಖರ್ಚು ಮಾಡುತ್ತಾನೆ. ನಿಮಗೆ ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಅವತೀರ್ಣವಾದ ಸಂದೇಶವು ಅವರಲ್ಲಿ ಹೆಚ್ಚಿನವರಿಗೆ ಅತಿರೇಕ ಮತ್ತು ಸತ್ಯನಿ-ಷೇಧವನ್ನು ಹೆಚ್ಚಿಸುತ್ತಿದೆ. ಪುನರುತ್ಥಾನದ ದಿನದ ತನಕ ನಾವು ಅವರ ನಡುವೆ ವೈರ ಮತ್ತು ದ್ವೇಷವನ್ನು ಉಂಟು ಮಾಡಿದ್ದೇವೆ. ಅವರು ಯುದ್ಧಕ್ಕೆ ಬೆಂಕಿ ಉರಿಸಿದಾಗಲೆಲ್ಲಾ ಅಲ್ಲಾಹು ಅದನ್ನು ನಂದಿಸುತ್ತಾನೆ. ಅವರು ಭೂಮಿಯಲ್ಲಿ ಕಿಡಿಗೇಡಿತನ ಮಾಡಲು ಪರಿಶ್ರಮಿಸುತ್ತಾರೆ. ಆದರೆ ಅಲ್ಲಾಹು ಕಿಡಿಗೇಡಿಗಳನ್ನು ಇಷ್ಟಪಡುವುದಿಲ್ಲ.

---

وَلَوۡ أَنَّ أَهۡلَ ٱلۡكِتَٰبِ ءَامَنُواْ وَٱتَّقَوۡاْ لَكَفَّرۡنَا
عَنۡهُمۡ سَيِّـَٔاتِهِمۡ وَلَأَدۡخَلۡنَٰهُمۡ جَنَّٰتِ
ٱلنَّعِيمِ ٦٥

65. ಗ್ರಂಥದವರು ವಿಶ್ವಾಸವಿಟ್ಟಿದ್ದರೆ ಮತ್ತು ದೇವಭಯದಿಂದ ಜೀವಿಸಿದ್ದರೆ ನಾವು ಅವರ ಪಾಪಗಳನ್ನು ಅಳಿಸುತ್ತಿದ್ದೆವು ಮತ್ತು ಅನುಗ್ರಹಪೂರ್ಣ ಸ್ವರ್ಗೋದ್ಯಾನಗಳಿಗೆ ಅವರನ್ನು ಪ್ರವೇಶ ಮಾಡಿಸುತ್ತಿದ್ದೆವು.

---

وَلَوۡ أَنَّهُمۡ أَقَامُواْ ٱلتَّوۡرَىٰةَ وَٱلۡإِنجِيلَ وَمَآ أُنزِلَ
إِلَيۡهِم مِّن رَّبِّهِمۡ لَأَكَلُواْ مِن فَوۡقِهِمۡ وَمِن
تَحۡتِ أَرۡجُلِهِمۚ مِّنۡهُمۡ أُمَّةٞ مُّقۡتَصِدَةٞۖ وَكَثِيرٞ مِّنۡهُمۡ
سَآءَ مَا يَعۡمَلُونَ ٦٦

66. ಅವರು ತೌರಾತ್, ಇಂಜೀಲ್ ಮತ್ತು ಅವರಿಗೆ ಅವರ ಪರಿಪಾಲಕನಿಂದ (ಅಲ್ಲಾಹನಿಂದ) ಅವತೀರ್ಣವಾದ ಸಂದೇಶಗಳನ್ನು ಸರಿಯಾಗಿ ಸಂಸ್ಥಾಪಿಸುತ್ತಿದ್ದರೆ ಅವರ ಮೇಲ್ಭಾಗದಿಂದ ಮತ್ತು ಕಾಲುಗಳ ಅಡಿಭಾಗದಿಂದ ಅವರಿಗೆ ತಿನ್ನಲು ಆಹಾರವು ದೊರೆಯುತ್ತಿತ್ತು. ಅವರಲ್ಲಿ ಮಿತವಾದಿಗಳಾದ ಜನರಿದ್ದಾರೆ. ಆದರೆ ಅವರಲ್ಲಿ ಹೆಚ್ಚಿನವರ ಕರ್ಮಗಳೂ ಅತ್ಯಂತ ನಿಕೃಷ್ಟವಾಗಿವೆ.

---

يَٰٓأَيُّهَا ٱلرَّسُولُ بَلِّغۡ مَآ أُنزِلَ إِلَيۡكَ مِن رَّبِّكَۖ
وَإِن لَّمۡ تَفۡعَلۡ فَمَا بَلَّغۡتَ رِسَالَتَهُۥۚ وَٱللَّهُ
يَعۡصِمُكَ مِنَ ٱلنَّاسِۗ إِنَّ ٱللَّهَ لَا يَهۡدِي ٱلۡقَوۡمَ
ٱلۡكَٰفِرِينَ ٦٧

67. ಓ ಸಂದೇಶವಾಹಕರೇ! ನಿಮಗೆ ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯಿಂದ ಅವತೀರ್ಣವಾದುದನ್ನು (ಜನರಿಗೆ) ತಲುಪಿಸಿರಿ. ನೀವು ಹಾಗೆ ಮಾಡದಿದ್ದರೆ ನೀವು ಅವನ ಸಂದೇಶವನ್ನು ತಲುಪಿಸಿಲ್ಲ. ಅಲ್ಲಾಹು ನಿಮ್ಮನ್ನು ಜನರಿಂದ ರಕ್ಷಿಸುವನು. ನಿಶ್ಚಯವಾಗಿಯೂ ಅಲ್ಲಾಹು ಸತ್ಯನಿಷೇಧಿಗಳಾದ ಜನರಿಗೆ ಸನ್ಮಾರ್ಗ ತೋರಿಸುವುದಿಲ್ಲ.

---

[1] ಬರಗಾಲ ಮತ್ತು ಸಂಕಷ್ಟಗಳು ಸಂಭವಿಸಿದಾಗ, ಅಲ್ಲಾಹನ ಕೈಗಳನ್ನು ಸಂಕೋಲೆಯಿಂದ ಬಂಧಿಸಲಾಗಿದೆಯೆಂದು ಯಹೂದಿಗಳು ಹೇಳುತ್ತಿದ್ದರು.

68. ಹೇಳಿರಿ: “ಓ ಗ್ರಂಥದವರೇ! ನೀವು ತೌರಾತ್, ಇಂಜೀಲ್ ಮತ್ತು ನಿಮಗೆ ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಅವತೀರ್ಣವಾದ ಸಂದೇಶಗಳನ್ನು ಸರಿಯಾಗಿ ಸಂಸ್ಥಾಪಿಸುವ ತನಕ ನಿಮಗೆ ಯಾವುದೇ ಅಸ್ತಿತ್ವವಿಲ್ಲ.” (ಪ್ರವಾದಿಯವರೇ) ನಿಮಗೆ ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಅವತೀರ್ಣವಾದ ಸಂದೇಶವು ಅವರಲ್ಲಿ ಹೆಚ್ಚಿನವರಿಗೆ ಅತಿರೇಕ ಮತ್ತು ಸತ್ಯನಿಷೇಧವನ್ನು ಹೆಚ್ಚಿಸುತ್ತಿದೆ. ಆದ್ದರಿಂದ ಆ ಸತ್ಯನಿಷೇಧಿಗಳ ಬಗ್ಗೆ ನೀವು ದುಃಖಿಸಬೇಡಿ.

قُلۡ يَٰٓأَهۡلَ ٱلۡكِتَٰبِ لَسۡتُمۡ عَلَىٰ شَيۡءٍ حَتَّىٰ
تُقِيمُواْ ٱلتَّوۡرَىٰةَ وَٱلۡإِنجِيلَ وَمَآ أُنزِلَ إِلَيۡكُم
مِّن رَّبِّكُمۡۗ وَلَيَزِيدَنَّ كَثِيرٗا مِّنۡهُم مَّآ أُنزِلَ
إِلَيۡكَ مِن رَّبِّكَ طُغۡيَٰنٗا وَكُفۡرٗاۖ فَلَا تَأۡسَ عَلَى
ٱلۡقَوۡمِ ٱلۡكَٰفِرِينَ ﴿٦٨﴾

69. ನಿಶ್ಚಯವಾಗಿಯೂ ಸತ್ಯವಿಶ್ವಾಸಿಗಳು, ಯಹೂದಿಗಳು, ಸಾಬಿಗಳು, ಕ್ರೈಸ್ತರು—ಇವರಲ್ಲಿ ಯಾರು ಅಲ್ಲಾಹನಲ್ಲಿ ಮತ್ತು ಅಂತ್ಯದಿನದಲ್ಲಿ ವಿಶ್ವಾಸವಿಡುತ್ತಾರೋ ಮತ್ತು ಸತ್ಕರ್ಮವೆಸಗುತ್ತಾರೋ ಅವರಿಗೆ ಯಾವುದೇ ಭಯವಿಲ್ಲ; ಅವರು ದುಃಖಿಸುವುದೂ ಇಲ್ಲ.[1]

إِنَّ ٱلَّذِينَ ءَامَنُواْ وَٱلَّذِينَ هَادُواْ وَٱلصَّٰبِـُٔونَ
وَٱلنَّصَٰرَىٰ مَنۡ ءَامَنَ بِٱللَّهِ وَٱلۡيَوۡمِ ٱلۡأٓخِرِ
وَعَمِلَ صَٰلِحٗا فَلَا خَوۡفٌ عَلَيۡهِمۡ وَلَا هُمۡ
يَحۡزَنُونَ ﴿٦٩﴾

70. ನಾವು ಇಸ್ರಾಯೇಲ್ ಮಕ್ಕಳಿಂದ ಕರಾರನ್ನು ಪಡೆದೆವು ಮತ್ತು ಅವರ ಬಳಿಗೆ ಸಂದೇಶವಾಹಕರನ್ನು ಕಳುಹಿಸಿದೆವು. ಅವರಿಗೆ ಇಷ್ಟವಿಲ್ಲದ ವಿಷಯಗಳೊಂದಿಗೆ ಸಂದೇಶವಾಹಕರು ಅವರ ಬಳಿಗೆ ಬಂದಾಗಲೆಲ್ಲಾ, ಅವರಲ್ಲಿ ಕೆಲವರನ್ನು ಅವರು ನಿಷೇಧಿಸಿದರು ಮತ್ತು ಕೆಲವರನ್ನು ಕೊಲೆ ಮಾಡಿದರು.

لَقَدۡ أَخَذۡنَا مِيثَٰقَ بَنِيٓ إِسۡرَٰٓءِيلَ وَأَرۡسَلۡنَآ
إِلَيۡهِمۡ رُسُلٗاۖ كُلَّمَا جَآءَهُمۡ رَسُولُۢ بِمَا لَا تَهۡوَىٰٓ
أَنفُسُهُمۡ فَرِيقٗا كَذَّبُواْ وَفَرِيقٗا يَقۡتُلُونَ ﴿٧٠﴾

71. ಯಾವುದೇ ಶಿಕ್ಷೆ ಎರಗುವುದಿಲ್ಲವೆಂದು ಅವರು ಭಾವಿಸಿದರು. ಆದ್ದರಿಂದ ಅವರು ಕುರುಡರು ಮತ್ತು ಕಿವುಡರಾದರು. ನಂತರ ಅಲ್ಲಾಹು ಅವರ ಪಶ್ಚಾತ್ತಾಪವನ್ನು ಸ್ವೀಕರಿಸಿದನು. ಅನಂತರ ಪುನಃ ಅವರಲ್ಲಿ ಹೆಚ್ಚಿನವರು ಕುರುಡರು ಮತ್ತು ಕಿವುಡರಾದರು. ಅಲ್ಲಾಹು ಅವರು ಮಾಡುತ್ತಿರುವುದನ್ನು ನೋಡುತ್ತಿದ್ದಾನೆ.

وَحَسِبُوٓاْ أَلَّا تَكُونَ فِتۡنَةٞ فَعَمُواْ وَصَمُّواْ ثُمَّ
تَابَ ٱللَّهُ عَلَيۡهِمۡ ثُمَّ عَمُواْ وَصَمُّواْ كَثِيرٞ مِّنۡهُمۡۚ
وَٱللَّهُ بَصِيرُۢ بِمَا يَعۡمَلُونَ ﴿٧١﴾

72. “ಮರ್ಯಮರ ಮಗ ಮಸೀಹನೇ ಅಲ್ಲಾಹು” ಎಂದು ಹೇಳಿದವರು ಖಂಡಿತವಾಗಿಯೂ ಸತ್ಯವನ್ನು ನಿಷೇಧಿಸಿದ್ದಾರೆ. ಆದರೆ ಮಸೀಹರು ಹೇಳಿದ್ದೇನೆಂದರೆ: “ಓ ಇಸ್ರಾಯೇಲ್ ಮಕ್ಕಳೇ! ನೀವು ನನ್ನ ಮತ್ತು ನಿಮ್ಮ ಪರಿಪಾಲಕನಾದ ಅಲ್ಲಾಹನನ್ನು ಆರಾಧಿಸಿರಿ.” ಯಾರು ಅಲ್ಲಾಹನೊಂದಿಗೆ ಸಹಭಾಗಿತ್ವ (ಶಿರ್ಕ್) ಮಾಡುತ್ತಾನೋ, ಅವನಿಗೆ ಅಲ್ಲಾಹು ಸ್ವರ್ಗವನ್ನು ಖಂಡಿತ ನಿಷೇಧಿಸಿದ್ದಾನೆ. ಅವನ ವಾಸಸ್ಥಳ ನರಕಾಗ್ನಿಯಾಗಿದೆ.[2]

لَقَدۡ كَفَرَ ٱلَّذِينَ قَالُوٓاْ إِنَّ ٱللَّهَ هُوَ ٱلۡمَسِيحُ
ٱبۡنُ مَرۡيَمَۖ وَقَالَ ٱلۡمَسِيحُ يَٰبَنِيٓ إِسۡرَٰٓءِيلَ
ٱعۡبُدُواْ ٱللَّهَ رَبِّي وَرَبَّكُمۡۖ إِنَّهُۥ مَن يُشۡرِكۡ
بِٱللَّهِ فَقَدۡ حَرَّمَ ٱللَّهُ عَلَيۡهِ ٱلۡجَنَّةَ وَمَأۡوَىٰهُ ٱلنَّارُۖ
وَمَا لِلظَّٰلِمِينَ مِنۡ أَنصَارٖ ﴿٧٢﴾

---

[1] 2:62 ವಚನದ ಟಿಪ್ಪಣಿ ನೋಡಿ.

[2] ಅಲ್ಲಾಹನೊಂದಿಗೆ ಸಹಭಾಗಿತ್ವ (ಶಿರ್ಕ್) ಮಾಡುವುದು ಎಂದರೆ ಅಲ್ಲಾಹನ ಪ್ರಭುತ್ವ, ದೈವತ್ವ ಮತ್ತು ಹೆಸರು ಹಾಗೂ ಗುಣಲಕ್ಷಣಗಳ-ಲ್ಲಿ ಇತರರನ್ನು ಸಹಭಾಗಿಯಾಗಿ ಮಾಡುವುದು. ಈಸಾರನ್ನು ಅಲ್ಲಾಹನ ಮಗ ಅಥವಾ ಅಲ್ಲಾಹು ಎಂದು ಕಲ್ಪಿಸುವುದು ಅಲ್ಲಾಹನೊಂದಿಗೆ

ಅಕ್ರಮಿಗಳಿಗೆ ಯಾವುದೇ ಸಹಾಯಕರಿಲ್ಲ.

---

73. “ಅಲ್ಲಾಹು ಮೂವರಲ್ಲಿ ಒಬ್ಬನು” ಎಂದು ಹೇಳಿದವರು ಖಂಡಿತವಾಗಿಯೂ ಸತ್ಯನಿಷೇಧಿಗಳಾಗಿದ್ದಾರೆ.[1] ಆದರೆ ಏಕೈಕ ಆರಾಧ್ಯನಾದ ಅಲ್ಲಾಹನ ಹೊರತು ಅನ್ಯ ದೇವರಿಲ್ಲ. ಅವರು ಹಾಗೆ ಹೇಳುವುದನ್ನು ನಿಲ್ಲಿಸದಿದ್ದರೆ, ಅವರಲ್ಲಿರುವ ಸತ್ಯನಿಷೇಧಿಗಳನ್ನು ಯಾತನಾಮಯ ಶಿಕ್ಷೆಯು ಸ್ಪರ್ಶಿಸುವುದು ನಿಶ್ಚಿತ.

لَّقَدۡ كَفَرَ ٱلَّذِينَ قَالُوٓاْ إِنَّ ٱللَّهَ ثَالِثُ ثَلَٰثَةٖۘ وَمَا مِنۡ إِلَٰهٍ إِلَّآ إِلَٰهٞ وَٰحِدٞۚ وَإِن لَّمۡ يَنتَهُواْ عَمَّا يَقُولُونَ لَيَمَسَّنَّ ٱلَّذِينَ كَفَرُواْ مِنۡهُمۡ عَذَابٌ أَلِيمٌ ٧٣

---

74. ಅವರಿಗೆ ಅಲ್ಲಾಹನ ಕಡೆಗೆ ಪಶ್ಚಾತ್ತಾಪದಿಂದ ಮರಳಿ ಅವನಲ್ಲಿ ಕ್ಷಮೆಯಾಚಿಸಬಾರದೇ? ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

أَفَلَا يَتُوبُونَ إِلَى ٱللَّهِ وَيَسۡتَغۡفِرُونَهُۥۚ وَٱللَّهُ غَفُورٞ رَّحِيمٞ ٧٤

---

75. ಮರ್ಯಮರ ಮಗ ಮಸೀಹರು ಒಬ್ಬ ಸಂದೇಶವಾಹಕರು ಮಾತ್ರ. ಅವರಿಗಿಂತ ಮೊದಲು ಅನೇಕ ಸಂದೇಶವಾಹಕರು ಬಂದು ಹೋಗಿದ್ದಾರೆ. ಅವರ ತಾಯಿ ಸತ್ಯವಂತೆ. ಅವರಿಬ್ಬರೂ ಆಹಾರ ಸೇವಿಸುತ್ತಿದ್ದರು. ನಾವು ಅವರಿಗೆ ಹೇಗೆ ದೃಷ್ಟಾಂತಗಳನ್ನು ವಿವರಿಸಿಕೊಡುತ್ತೇವೆಂದು ನೋಡಿ. ನಂತರ ಅವರು ಹೇಗೆ (ಸತ್ಯದಿಂದ) ತಪ್ಪಿಹೋಗುತ್ತಿದ್ದಾರೆಂದು ನೋಡಿ.[2]

مَّا ٱلۡمَسِيحُ ٱبۡنُ مَرۡيَمَ إِلَّا رَسُولٞ قَدۡ خَلَتۡ مِن قَبۡلِهِ ٱلرُّسُلُ وَأُمُّهُۥ صِدِّيقَةٞۖ كَانَا يَأۡكُلَانِ ٱلطَّعَامَۗ ٱنظُرۡ كَيۡفَ نُبَيِّنُ لَهُمُ ٱلۡأٓيَٰتِ ثُمَّ ٱنظُرۡ أَنَّىٰ يُؤۡفَكُونَ ٧٥

---

76. ಹೇಳಿರಿ: “ನೀವು ಅಲ್ಲಾಹನನ್ನು ಬಿಟ್ಟು, ನಿಮಗೆ ಉಪಕಾರ ಅಥವಾ ತೊಂದರೆ ಮಾಡದವುಗಳನ್ನು ಆರಾಧಿಸುತ್ತಿದ್ದೀರಾ? ಅಲ್ಲಾಹನಾದರೋ ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.”

قُلۡ أَتَعۡبُدُونَ مِن دُونِ ٱللَّهِ مَا لَا يَمۡلِكُ لَكُمۡ ضَرّٗا وَلَا نَفۡعٗاۚ وَٱللَّهُ هُوَ ٱلسَّمِيعُ ٱلۡعَلِيمُ ٧٦

---

77. ಹೇಳಿರಿ: “ಓ ಗ್ರಂಥದವರೇ! ನೀವು ನಿಮ್ಮ ಧರ್ಮದಲ್ಲಿ ಸತ್ಯಕ್ಕೆ ವಿರುದ್ಧವಾಗಿ ಹದ್ದುಮೀರಬೇಡಿ. ಈಗಾಗಲೇ ದಾರಿತಪ್ಪಿರುವ, ಅನೇಕ ಜನರನ್ನು ದಾರಿತಪ್ಪಿಸುತ್ತಿರುವ ಮತ್ತು ನೇರಮಾರ್ಗದಿಂದ ತಪ್ಪಿಹೋಗಿರುವ ಜನರ ಸ್ವೇಚ್ಛಾಚಾರಗಳನ್ನು ಹಿಂಬಾಲಿಸಬೇಡಿ.

قُلۡ يَٰٓأَهۡلَ ٱلۡكِتَٰبِ لَا تَغۡلُواْ فِي دِينِكُمۡ غَيۡرَ ٱلۡحَقِّ وَلَا تَتَّبِعُوٓاْ أَهۡوَآءَ قَوۡمٖ قَدۡ ضَلُّواْ مِن قَبۡلُ وَأَضَلُّواْ كَثِيرٗا وَضَلُّواْ عَن سَوَآءِ ٱلسَّبِيلِ ٧٧

---

78. ಇಸ್ರಾಯೇಲ್ ಮಕ್ಕಳಲ್ಲಿರುವ ಸತ್ಯನಿಷೇಧಿಗಳು ದಾವೂದರ ಮತ್ತು ಮರ್ಯಮರ ಮಗ ಈಸಾರ ನಾಲಗೆಯಿಂದ ಶಾಪಕ್ಕೆ

لُعِنَ ٱلَّذِينَ كَفَرُواْ مِنۢ بَنِيٓ إِسۡرَٰٓءِيلَ عَلَىٰ لِسَانِ دَاوُۥدَ وَعِيسَى ٱبۡنِ مَرۡيَمَۚ ذَٰلِكَ بِمَا

---

ಮಾಡುವ ಸಹಭಾಗಿತ್ವವಾಗಿದೆ. ಅಲ್ಲಾಹನೊಂದಿಗೆ ಸಹಭಾಗಿತ್ವ ಮಾಡುವವರಿಗೆ ಸ್ವರ್ಗವನ್ನು ನಿಷೇಧಿಸಲಾಗಿದೆ. ಅವರು ಶಾಶ್ವತ ನರಕಶಿಕ್ಷೆಗೆ ಗುರಿಯಾಗುತ್ತಾರೆ.

[1] ಕ್ರೈಸ್ತರಲ್ಲಿ ಕೆಲವರು ತ್ರಿಯೇಕತ್ವದ ಪರಿಕಲ್ಪನೆಯನ್ನು ಹೊಂದಿದ್ದಾರೆ. ಅಂದರೆ ತಂದೆ (ಅಲ್ಲಾಹು), ಮಗ (ಈಸಾ) ಮತ್ತು ಪವಿತ್ರಾತ್ಮ (ಜಿಬ್ರೀಲ್) ಎಲ್ಲರೂ ದೇವರು ಎಂಬ ಪರಿಕಲ್ಪನೆ.

[2] ಈಸಾ (ಯೇಸು) ದೇವರಲ್ಲ ಎನ್ನುವುದಕ್ಕೆ ಇದು ಸ್ಪಷ್ಟ ಸಾಕ್ಷ್ಯವಾಗಿದೆ. ದೇವನು ನಿರಪೇಕ್ಷ. ಅವನು ಹಸಿವೆ, ನಿದ್ದೆ ಮುಂತಾದ ಮನುಷ್ಯ ಗುಣಗಳಿಂದ ಮುಕ್ತನಾಗಿದ್ದಾನೆ. ಹಸಿವೆಯಿರುವವನು, ಆಹಾರ ಸೇವಿಸುವವನು ದೇವನಾಗಲು ಸಾಧ್ಯವಿಲ್ಲ. ಏಕೆಂದರೆ ಅದು ದೈವಿಕ ಗುಣಕ್ಕೆ ವಿರುದ್ಧವಾಗಿದೆ.

ಗುರಿಯಾಗಿದ್ದಾರೆ. ಅದು ಅವರು ಅವಿಧೇಯತೆ ತೋರಿದ ಮತ್ತು ಅತಿರೇಕವೆಸಗಿದ ಕಾರಣದಿಂದಾಗಿದೆ.

عَصَواْ وَّكَانُواْ يَعْتَدُونَ ﴿٧٨﴾

---

79. ಅವರು ಮಾಡುತ್ತಿದ್ದ ದುಷ್ಕರ್ಮಗಳನ್ನು ಅವರು ಪರಸ್ಪರ ವಿರೋಧಿಸುತ್ತಿರಲಿಲ್ಲ. ಅವರು ಮಾಡುವ ಕರ್ಮಗಳು ಬಹಳ ನಿಕೃಷ್ಟವಾಗಿವೆ.

كَانُواْ لَا يَتَنَاهَوْنَ عَن مُّنكَرٍ فَعَلُوهُۚ لَبِئْسَ مَا كَانُواْ يَفْعَلُونَ ﴿٧٩﴾

---

80. ಅವರಲ್ಲಿ ಹೆಚ್ಚಿನವರು ಸತ್ಯನಿಷೇಧಿಗಳನ್ನು ಆಪ್ತಮಿತ್ರರಾಗಿ ಸ್ವೀ-ಕರಿಸುವುದನ್ನು ನೀವು ಕಾಣುವಿರಿ. ಅವರು ಸ್ವತಃ ಅವರಿಗಾಗಿ ಮುಂದಕ್ಕೆ ಕಳುಹಿಸಿರುವ ಕರ್ಮಗಳು ಬಹಳ ನಿಕೃಷ್ಟವಾಗಿವೆ. (ಇದರಿಂದಾಗಿ) ಅವರು ಅಲ್ಲಾಹನ ಕೋಪಕ್ಕೆ ಪಾತ್ರರಾದರು ಮತ್ತು ಅವರು ಶಾಶ್ವತ ಶಿಕ್ಷೆಯನ್ನು ಅನುಭವಿಸುವರು.

تَرَىٰ كَثِيرًا مِّنْهُمْ يَتَوَلَّوْنَ ٱلَّذِينَ كَفَرُواْۚ لَبِئْسَ مَا قَدَّمَتْ لَهُمْ أَنفُسُهُمْ أَن سَخِطَ ٱللَّهُ عَلَيْهِمْ وَفِي ٱلْعَذَابِ هُمْ خَٰلِدُونَ ﴿٨٠﴾

---

81. ಅವರು ಅಲ್ಲಾಹನಲ್ಲಿ, ಪ್ರವಾದಿಯಲ್ಲಿ ಮತ್ತು ಅವರಿಗೆ (ಪ್ರವಾದಿಗೆ) ಅವತೀರ್ಣವಾಗಿರುವುದರಲ್ಲಿ ವಿಶ್ವಾಸವಿಡುತ್ತಿದ್ದರೆ ಅವರನ್ನು (ಸತ್ಯನಿಷೇಧಿಗಳನ್ನು) ಆಪ್ತಮಿತ್ರರಾಗಿ ಸ್ವೀಕರಿಸುತ್ತಿರ-ಲಿಲ್ಲ. ಆದರೆ ಅವರಲ್ಲಿ ಹೆಚ್ಚಿನವರು ದುಷ್ಕರ್ಮಿಗಳಾಗಿದ್ದಾರೆ.

وَلَوْ كَانُواْ يُؤْمِنُونَ بِٱللَّهِ وَٱلنَّبِيِّ وَمَآ أُنزِلَ إِلَيْهِ مَا ٱتَّخَذُوهُمْ أَوْلِيَآءَ وَلَٰكِنَّ كَثِيرًا مِّنْهُمْ فَٰسِقُونَ ﴿٨١﴾

---

82. ಯಹೂದಿಗಳು ಮತ್ತು ಬಹುದೇವಾರಾಧಕರು ಸತ್ಯವಿ-ಶ್ವಾಸಿಗಳ ಕಡುವೈರಿಗಳಾಗಿರುವುದನ್ನು ನೀವು ಕಾಣುವಿರಿ. “ನಾವು ಕ್ರೈಸ್ತರು” ಎಂದು ಹೇಳುವವರು ಸತ್ಯವಿಶ್ವಾಸಿಗ-ಳೊಂದಿಗೆ ಅತಿಹತ್ತಿರದ ಮಮತೆಯುಳ್ಳವರಾಗಿ ಕಾಣುವಿರಿ. ಅವರಲ್ಲಿ ವಿದ್ವಾಂಸರು ಮತ್ತು ಸನ್ಯಾಸಿಗಳಿದ್ದಾರೆ ಮತ್ತು ಅವರು ಅಹಂಕಾರಿಗಳಲ್ಲ ಎಂಬುದೇ ಇದಕ್ಕೆ ಕಾರಣವಾಗಿದೆ.

لَتَجِدَنَّ أَشَدَّ ٱلنَّاسِ عَدَٰوَةً لِّلَّذِينَ ءَامَنُواْ ٱلْيَهُودَ وَٱلَّذِينَ أَشْرَكُواْۖ وَلَتَجِدَنَّ أَقْرَبَهُم مَّوَدَّةً لِّلَّذِينَ ءَامَنُواْ ٱلَّذِينَ قَالُوٓاْ إِنَّا نَصَٰرَىٰۚ ذَٰلِكَ بِأَنَّ مِنْهُمْ قِسِّيسِينَ وَرُهْبَانًا وَأَنَّهُمْ لَا يَسْتَكْبِرُونَ ﴿٨٢﴾

---

83. ಸಂದೇಶವಾಹಕರಿಗೆ ಅವತೀರ್ಣವಾದ ಸಂದೇಶಕ್ಕೆ ಕಿವಿಗೊಟ್ಟಾಗ, ಸತ್ಯವನ್ನು ತಿಳಿದು ಅವರ ಕಣ್ಣುಗಳಿಂದ ಕಣ್ಣೀರು ಹರಿಯುವುದನ್ನು ನೀವು ಕಾಣುವಿರಿ. ಅವರು ಹೇಳುವರು: “ಓ ನಮ್ಮ ಪರಿಪಾಲಕನೇ! ನಾವು ವಿಶ್ವಾಸವಿಟ್ಟಿದ್ದೇವೆ. ಆದ್ದರಿಂದ ಸತ್ಯಕ್ಕೆ ಸಾಕ್ಷಿಯಾದವರಲ್ಲಿ ನಮ್ಮನ್ನೂ ಸೇರಿಸು.

وَإِذَا سَمِعُواْ مَآ أُنزِلَ إِلَى ٱلرَّسُولِ تَرَىٰٓ أَعْيُنَهُمْ تَفِيضُ مِنَ ٱلدَّمْعِ مِمَّا عَرَفُواْ مِنَ ٱلْحَقِّۖ يَقُولُونَ رَبَّنَآ ءَامَنَّا فَٱكْتُبْنَا مَعَ ٱلشَّٰهِدِينَ ﴿٨٣﴾

---

84. ಅಲ್ಲಾಹನಲ್ಲಿ ಮತ್ತು ನಮಗೆ ಬಂದ ಸಂದೇಶದಲ್ಲಿ ವಿಶ್ವಾಸವಿ-ಡದಿರಲು ನಮಗೇನಾಗಿದೆ? ನಮ್ಮ ಪರಿಪಾಲಕನು (ಅಲ್ಲಾಹು) ನಮ್ಮನ್ನು ನೀತಿವಂತರೊಂದಿಗೆ ಸ್ವರ್ಗ ಪ್ರವೇಶ ಮಾಡಿಸಬೇಕೆಂದು ನಾವು ಆಸೆಪಡುತ್ತೇವೆ.”

وَمَا لَنَا لَا نُؤْمِنُ بِٱللَّهِ وَمَا جَآءَنَا مِنَ ٱلْحَقِّ وَنَطْمَعُ أَن يُدْخِلَنَا رَبُّنَا مَعَ ٱلْقَوْمِ ٱلصَّٰلِحِينَ ﴿٨٤﴾

---

85. ಅವರು ಹೇಳಿದ ಮಾತಿನಿಂದಾಗಿ ಅಲ್ಲಾಹು ಅವರಿಗೆ ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳನ್ನು

فَأَثَٰبَهُمُ ٱللَّهُ بِمَا قَالُواْ جَنَّٰتٍ تَجْرِي مِن تَحْتِهَا ٱلْأَنْهَٰرُ خَٰلِدِينَ فِيهَاۚ وَذَٰلِكَ

ಪ್ರತಿಫಲವಾಗಿ ನೀಡಿದನು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅದು ಒಳಿತು ಮಾಡುವವರಿಗಿರುವ ಪ್ರತಿಫಲವಾಗಿದೆ.

جَزَآءُ ٱلۡمُحۡسِنِينَ ٨٥

---

86. ಸತ್ಯನಿಷೇಧಿಗಳು ಮತ್ತು ನಮ್ಮ ವಚನಗಳನ್ನು ನಿಷೇಧಿಸಿದವರು ಯಾರೋ ಅವರೇ ನರಕವಾಸಿಗಳು.

وَٱلَّذِينَ كَفَرُواْ وَكَذَّبُواْ بِـَٔايَٰتِنَآ أُوْلَٰٓئِكَ
أَصۡحَٰبُ ٱلۡجَحِيمِ ٨٦

---

87. ಓ ಸತ್ಯವಿಶ್ವಾಸಿಗಳೇ! ಅಲ್ಲಾಹು ನಿಮಗೆ ಅನುಮತಿಸಿದ ಉತ್ತಮ ವಸ್ತುಗಳನ್ನು ನಿಷೇಧಿಸಬೇಡಿ ಮತ್ತು ಎಲ್ಲೆ ಮೀರಬೇಡಿ. ನಿಶ್ಚಯವಾಗಿಯೂ ಎಲ್ಲೆ ಮೀರುವವರನ್ನು ಅಲ್ಲಾಹು ಇಷ್ಟಪಡುವುದಿಲ್ಲ.

يَٰٓأَيُّهَا ٱلَّذِينَ ءَامَنُواْ لَا تُحَرِّمُواْ طَيِّبَٰتِ مَآ
أَحَلَّ ٱللَّهُ لَكُمۡ وَلَا تَعۡتَدُوٓاْۚ إِنَّ ٱللَّهَ لَا يُحِبُّ
ٱلۡمُعۡتَدِينَ ٨٧

---

88. ಅಲ್ಲಾಹು ನಿಮಗೆ ಒದಗಿಸಿದ ಧರ್ಮಸಮ್ಮತ ಮತ್ತು ಶುದ್ಧ ವಸ್ತುಗಳನ್ನು ತಿನ್ನಿರಿ. ಯಾರ ಮೇಲೆ ನೀವು ವಿಶ್ವಾಸವಿಡುತ್ತೀರೋ ಆ ಅಲ್ಲಾಹನನ್ನು ಭಯಪಡಿರಿ.

وَكُلُواْ مِمَّا رَزَقَكُمُ ٱللَّهُ حَلَٰلٗا طَيِّبٗاۚ وَٱتَّقُواْ
ٱللَّهَ ٱلَّذِيٓ أَنتُم بِهِۦ مُؤۡمِنُونَ ٨٨

---

89. ನೀವು ಅರ್ಥವಿಲ್ಲದೆ[1] ಮಾಡುವ ಪ್ರತಿಜ್ಞೆಗಳಿಗಾಗಿ ಅಲ್ಲಾಹು ನಿಮ್ಮನ್ನು ಹಿಡಿಯುವುದಿಲ್ಲ. ಆದರೆ ನೀವು ದೃಢನಿರ್ಧಾರದಿಂದ ಮಾಡಿದ ಪ್ರತಿಜ್ಞೆಗಳಿಗಾಗಿ ಅವನು ನಿಮ್ಮನ್ನು ಹಿಡಿಯುತ್ತಾನೆ. ಅದಕ್ಕೆ ಪರಿಹಾರವೇನೆಂದರೆ, ಹತ್ತು ಮಂದಿ ಬಡವರಿಗೆ ನೀವು ನಿಮ್ಮ ಮನೆಯವರಿಗೆ ಉಣಿಸುವ ಮಧ್ಯಮ ರೀತಿಯ ಆಹಾರವನ್ನು ಉಣಿಸುವುದು, ಅಥವಾ ಅವರಿಗೆ ಬಟ್ಟೆ-ಬರೆ ನೀಡುವುದು, ಅಥವಾ ಒಬ್ಬ ಗುಲಾಮನನ್ನು ಸ್ವತಂತ್ರಗೊಳಿ-ಸುವುದು. ಯಾರಿಗೆ ಇದು ಸಾಧ್ಯವಿಲ್ಲವೋ ಅವನು ಮೂರು ದಿನ ಉಪವಾಸ ಆಚರಿಸಬೇಕು. ಇದು ನೀವು ನಿಮ್ಮ ಪ್ರತಿಜ್ಞೆ-ಗಳನ್ನು ಉಲ್ಲಂಘಿಸಿದರೆ ನೀಡಬೇಕಾದ ಪರಿಹಾರವಾಗಿದೆ. ನಿಮ್ಮ ಪ್ರತಿಜ್ಞೆಗಳನ್ನು ಕಾಯ್ದುಕೊಳ್ಳಿರಿ. ಹೀಗೆ ಅಲ್ಲಾಹು ನಿಮಗೆ ಅವನ ವಚನಗಳನ್ನು ವಿವರಿಸಿಕೊಡುತ್ತಾನೆ. ನೀವು ಕೃತಜ್ಞರಾಗುವುದಕ್ಕಾಗಿ.

لَا يُؤَاخِذُكُمُ ٱللَّهُ بِٱللَّغۡوِ فِيٓ أَيۡمَٰنِكُمۡ
وَلَٰكِن يُؤَاخِذُكُم بِمَا عَقَّدتُّمُ ٱلۡأَيۡمَٰنَۖ
فَكَفَّٰرَتُهُۥٓ إِطۡعَامُ عَشَرَةِ مَسَٰكِينَ مِنۡ أَوۡسَطِ
مَا تُطۡعِمُونَ أَهۡلِيكُمۡ أَوۡ كِسۡوَتُهُمۡ أَوۡ
تَحۡرِيرُ رَقَبَةٖۖ فَمَن لَّمۡ يَجِدۡ فَصِيَامُ ثَلَٰثَةِ أَيَّامٖۚ
ذَٰلِكَ كَفَّٰرَةُ أَيۡمَٰنِكُمۡ إِذَا حَلَفۡتُمۡۚ وَٱحۡفَظُوٓاْ
أَيۡمَٰنَكُمۡۚ كَذَٰلِكَ يُبَيِّنُ ٱللَّهُ لَكُمۡ ءَايَٰتِهِۦ
لَعَلَّكُمۡ تَشۡكُرُونَ ٨٩

---

90. ಓ ಸತ್ಯವಿಶ್ವಾಸಿಗಳೇ! ನಿಶ್ಚಯವಾಗಿಯೂ ಮದ್ಯ, ಜೂಜು, ಬಲಿಪೀಠಗಳು ಮತ್ತು ಅದೃಷ್ಟ ಪರೀಕ್ಷಿಸುವ ಬಾಣಗಳು ಪೈಶಾಚಿಕವಾದ ಹೊಲಸು ಕೃತ್ಯಗಳಾಗಿವೆ. ಆದ್ದರಿಂದ ನೀವು ಅವುಗಳಿಂದ ದೂರವಿರಿ. ನೀವು ಯಶಸ್ವಿಯಾಗುವುದಕ್ಕಾಗಿ.[2]

يَٰٓأَيُّهَا ٱلَّذِينَ ءَامَنُوٓاْ إِنَّمَا ٱلۡخَمۡرُ وَٱلۡمَيۡسِرُ
وَٱلۡأَنصَابُ وَٱلۡأَزۡلَٰمُ رِجۡسٞ مِّنۡ عَمَلِ
ٱلشَّيۡطَٰنِ فَٱجۡتَنِبُوهُ لَعَلَّكُمۡ تُفۡلِحُونَ ٩٠

---

[1] ಅಂದರೆ ದೃಢನಿರ್ಧಾರವಿಲ್ಲದೆ ಅಭ್ಯಾಸಬಲದಿಂದ ಮಾಡುವ ಪ್ರತಿಜ್ಞೆಗಳು.

[2] ಅಮಲು ಪದಾರ್ಥಗಳೆಲ್ಲವೂ ಮದ್ಯದ ವ್ಯಾಪ್ತಿಯಲ್ಲಿ ಬರುತ್ತವೆ. ಲಾಟರಿ, ಮಟ್ಕಾ ಮುಂತಾದ ಹಣವಿಟ್ಟು ಆಡುವ ಆಟಗಳೆಲ್ಲವೂ

91. ಮದ್ಯ ಮತ್ತು ಜೂಜಿನ ಮೂಲಕ ನಿಮ್ಮ ನಡುವೆ ವೈರ ಹಾಗೂ ದ್ವೇಷವನ್ನು ಬಿತ್ತಲು ಮತ್ತು ನಿಮ್ಮನ್ನು ಅಲ್ಲಾಹನ ಸ್ಮರಣೆ ಹಾಗೂ ನಮಾಝ್‌ನಿಂದ ತಡೆಯಲು ಶೈತಾನನು ಬಯಸುತ್ತಾನೆ. ಆದ್ದರಿಂದ (ಇನ್ನಾದರೂ) ನೀವು ಅದನ್ನು ನಿಲ್ಲಿಸುವಿರಾ?

إِنَّمَا يُرِيدُ ٱلشَّيْطَٰنُ أَن يُوقِعَ بَيْنَكُمُ ٱلْعَدَٰوَةَ وَٱلْبَغْضَآءَ فِى ٱلْخَمْرِ وَٱلْمَيْسِرِ وَيَصُدَّكُمْ عَن ذِكْرِ ٱللَّهِ وَعَنِ ٱلصَّلَوٰةِ ۖ فَهَلْ أَنتُم مُّنتَهُونَ ﴿٩١﴾

92. ನೀವು ಅಲ್ಲಾಹನ ಆಜ್ಞೆಗಳನ್ನು ಮತ್ತು ಸಂದೇಶವಾಹಕರ ಆಜ್ಞೆಗಳನ್ನು ಪಾಲಿಸಿರಿ ಮತ್ತು ಜಾಗರೂಕರಾಗಿರಿ. ನೀವು ವಿಮುಖರಾದರೆ ತಿಳಿಯಿರಿ! ನಮ್ಮ ಸಂದೇಶವಾಹಕರ ಕರ್ತವ್ಯವು ಸಂದೇಶವನ್ನು ಸ್ಪಷ್ಟವಾಗಿ ತಲುಪಿಸಿಕೊಡುವುದು ಮಾತ್ರವಾಗಿದೆ.

وَأَطِيعُوا۟ ٱللَّهَ وَأَطِيعُوا۟ ٱلرَّسُولَ وَٱحْذَرُوا۟ ۚ فَإِن تَوَلَّيْتُمْ فَٱعْلَمُوٓا۟ أَنَّمَا عَلَىٰ رَسُولِنَا ٱلْبَلَٰغُ ٱلْمُبِينُ ﴿٩٢﴾

93. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಈ ಹಿಂದೆ ಏನು ಸೇವಿಸಿದ್ದಾರೋ ಅದರಲ್ಲಿ ಅವರಿಗೆ ದೋಷವಿಲ್ಲ—ಅವರು ಅಲ್ಲಾಹನನ್ನು ಭಯಪಟ್ಟು, ವಿಶ್ವಾಸವಿಟ್ಟು, ಸತ್ಕರ್ಮವೆಸಗಿದರೆ, ನಂತರ ಪುನಃ ಅಲ್ಲಾಹನನ್ನು ಭಯಪಟ್ಟು ವಿಶ್ವಾಸವಿಟ್ಟರೆ ಮತ್ತು ನಂತರ ಪುನಃ ಅಲ್ಲಾಹನನ್ನು ಭಯಪಟ್ಟು ಒಳಿತು ಮಾಡಿದರೆ. ಒಳಿತು ಮಾಡುವವರನ್ನು ಅಲ್ಲಾಹು ಇಷ್ಟಪಡುತ್ತಾನೆ.[1]

لَيْسَ عَلَى ٱلَّذِينَ ءَامَنُوا۟ وَعَمِلُوا۟ ٱلصَّٰلِحَٰتِ جُنَاحٌ فِيمَا طَعِمُوٓا۟ إِذَا مَا ٱتَّقَوا۟ وَّءَامَنُوا۟ وَعَمِلُوا۟ ٱلصَّٰلِحَٰتِ ثُمَّ ٱتَّقَوا۟ وَّءَامَنُوا۟ ثُمَّ ٱتَّقَوا۟ وَّأَحْسَنُوا۟ ۗ وَٱللَّهُ يُحِبُّ ٱلْمُحْسِنِينَ ﴿٩٣﴾

94. ಓ ಸತ್ಯವಿಶ್ವಾಸಿಗಳೇ! ಅದೃಶ್ಯ ಸ್ಥಿತಿಯಲ್ಲಿ ಅಲ್ಲಾಹನನ್ನು ಭಯಪಡುವವರು ಯಾರೆಂದು ತಿಳಿಯಲು, ನಿಮ್ಮ ಕೈಗಳು ಮತ್ತು ಈಟಿಗಳು ತಲುಪುವ ರೀತಿಯಲ್ಲಿರುವ ಬೇಟೆ ಪ್ರಾಣಿಯ ಮೂಲಕ ಅಲ್ಲಾಹು ನಿಮ್ಮನ್ನು ಖಂಡಿತ ಪರೀಕ್ಷಿಸುವನು. ಅದರ ಬಳಿಕವೂ ಯಾರಾದರೂ ಅತಿರೇಕವೆಸಗಿದರೆ ಅವನಿಗೆ ಯಾತನಾಮಯ ಶಿಕ್ಷೆಯಿದೆ.

يَٰٓأَيُّهَا ٱلَّذِينَ ءَامَنُوا۟ لَيَبْلُوَنَّكُمُ ٱللَّهُ بِشَىْءٍ مِّنَ ٱلصَّيْدِ تَنَالُهُۥٓ أَيْدِيكُمْ وَرِمَاحُكُمْ لِيَعْلَمَ ٱللَّهُ مَن يَخَافُهُۥ بِٱلْغَيْبِ ۚ فَمَنِ ٱعْتَدَىٰ بَعْدَ ذَٰلِكَ فَلَهُۥ عَذَابٌ أَلِيمٌ ﴿٩٤﴾

95. ಓ ಸತ್ಯವಿಶ್ವಾಸಿಗಳೇ! ನೀವು ಇಹ್ರಾಮ್‌ನಲ್ಲಿರುವಾಗ ಬೇಟೆಯಾಡಿ ಪ್ರಾಣಿಯನ್ನು ಕೊಲ್ಲಬೇಡಿ. ನಿಮ್ಮಲ್ಲಿ ಯಾರಾದರೂ ಉದ್ದೇಶಪೂರ್ವಕ ಬೇಟೆಯಾಡಿ ಪ್ರಾಣಿಯನ್ನು ಕೊಂದರೆ, ಅದಕ್ಕಿರುವ ಪರಿಹಾರವು ಅವನು ಕೊಂದ ಮೃಗವನ್ನು ಹೋಲುತ್ತದೆಯೆಂದು ಇಬ್ಬರು ನ್ಯಾಯಸಮ್ಮತ ಜನರು ತೀರ್ಪು ನೀಡುವ ಪ್ರಾಣಿಯನ್ನು ಕಅಬಾಲಯಕ್ಕೆ ಹರಕೆಯ

يَٰٓأَيُّهَا ٱلَّذِينَ ءَامَنُوا۟ لَا تَقْتُلُوا۟ ٱلصَّيْدَ وَأَنتُمْ حُرُمٌ ۚ وَمَن قَتَلَهُۥ مِنكُم مُّتَعَمِّدًا فَجَزَآءٌ مِّثْلُ مَا قَتَلَ مِنَ ٱلنَّعَمِ يَحْكُمُ بِهِۦ ذَوَا عَدْلٍ مِّنكُمْ هَدْيًۢا بَٰلِغَ ٱلْكَعْبَةِ أَوْ كَفَّٰرَةٌ طَعَامُ مَسَٰكِينَ أَوْ عَدْلُ ذَٰلِكَ صِيَامًا لِّيَذُوقَ وَبَالَ

---

ಜೂಜಿನ ವ್ಯಾಪ್ತಿಯಲ್ಲಿ ಬರುತ್ತವೆ. ಬಲಿಪೀಠಗಳು ಎಂದರೆ ಬಹುದೇವಾರಾಧಕರು ತಮ್ಮ ವಿಗ್ರಹಗಳಿಗೆ ಬಲಿ ನೀಡುವ ಪೀಠಗಳು. ಅದೃಷ್ಟ ಪರೀಕ್ಷಿಸುವ ಬಾಣಗಳು ಎಂದರೆ ಶುಭ ಮತ್ತು ಅಶುಭವನ್ನು ಪರೀಕ್ಷಿಸುವುದಕ್ಕಾಗಿ ಚೀಟಿಯೆತ್ತುವುದು. ಶುಭ ಎಂದು ಬಂದರೆ ಕೆಲಸದಲ್ಲಿ ಮುಂದುವರಿಯುವುದು ಮತ್ತು ಅಶುಭ ಎಂದು ಬಂದರೆ ಕೆಲಸವನ್ನು ಮೊಟಕುಗೊಳಿಸುವುದು.

[1] ಇಸ್ಲಾಮ್ ಮದ್ಯಪಾನವನ್ನು ಹಂತ ಹಂತವಾಗಿ ನಿಷೇಧಿಸಿತು. ಮದ್ಯಪಾನವನ್ನು ಸಂಪೂರ್ಣವಾಗಿ ನಿಷೇಧಿಸುವುದಕ್ಕೆ ಮೊದಲು ಅದರ ಹಾನಿಗಳ ಬಗ್ಗೆ ಎಚ್ಚರಿಸಲಾಯಿತು. ಪಾನಮತ್ತರಾದ ಸ್ಥಿತಿಯಲ್ಲಿ ನಮಾಝ್ ಮಾಡುವುದನ್ನು ವಿರೋಧಿಸಲಾಯಿತು. ಇನ್ನಾದರೂ ನೀವು ಅದನ್ನು ನಿಲ್ಲಿಸುವಿರಾ ಎಂಬ ವಚನದ (91) ಮೂಲಕ ಸಂಪೂರ್ಣ ಪಾನನಿಷೇಧ ಜಾರಿಗೆ ಬಂತು. ಪಾನನಿಷೇಧ ಸಂಪೂರ್ಣ ಜಾರಿಯಾಗುವ ಮೊದಲು ಮದ್ಯಪಾನ ಮಾಡಿದವರಿಗೆ ಶಿಕ್ಷೆಯಿಲ್ಲ ಎಂದು ಈ ವಚನವು ಸ್ಪಷ್ಟಪಡಿಸುತ್ತದೆ.

أَمۡرِهِۦۗ عَفَا ٱللَّهُ عَمَّا سَلَفَۚ وَمَنۡ عَادَ فَيَنتَقِمُ ٱللَّهُ مِنۡهُۚ وَٱللَّهُ عَزِيزٞ ذُو ٱنتِقَامٍ ٩٥

ರೂಪದಲ್ಲಿ ತಲುಪುವ ಬಲಿಮೃಗವಾಗಿ ನೀಡುವುದು; ಅಥವಾ ಅದಕ್ಕೆ ಪರಿಹಾರವಾಗಿ ಬಡವರಿಗೆ ಅನ್ನದಾನ ಮಾಡುವುದು; ಅಥವಾ ಅದಕ್ಕೆ ಸಮಾನವಾಗುವಷ್ಟು ಸಂಖ್ಯೆಯ ಉಪವಾಸ ಆಚರಿಸುವುದು.[1] ಅದು ಅವನು ಮಾಡಿದ ಕರ್ಮದ ಫಲವನ್ನು ಅವನು ಅನುಭವಿಸಲಿಕ್ಕಾಗಿ. ಈ ಹಿಂದೆ ಸಂಭವಿಸಿದ ತಪ್ಪುಗಳನ್ನು ಅಲ್ಲಾಹು ಕ್ಷಮಿಸಿದ್ದಾನೆ. ಆದರೆ ಯಾರಾದರೂ ಅದನ್ನು ಪುನರಾವರ್ತಿಸಿದರೆ, ಅಲ್ಲಾಹು ಅವನಿಂದ ಪ್ರತೀಕಾರವನ್ನು ಪಡೆಯುವನು. ಅಲ್ಲಾಹು ಪ್ರಬಲನು ಮತ್ತು ಪ್ರತೀಕಾರ ಪಡೆಯುವವನಾಗಿದ್ದಾನೆ.

---

أُحِلَّ لَكُمۡ صَيۡدُ ٱلۡبَحۡرِ وَطَعَامُهُۥ مَتَٰعٗا لَّكُمۡ وَلِلسَّيَّارَةِۖ وَحُرِّمَ عَلَيۡكُمۡ صَيۡدُ ٱلۡبَرِّ مَا دُمۡتُمۡ حُرُمٗاۗ وَٱتَّقُواْ ٱللَّهَ ٱلَّذِيٓ إِلَيۡهِ تُحۡشَرُونَ ٩٦

96. ನಿಮಗೆ ಸಮುದ್ರ ಬೇಟೆ ಮತ್ತು ಅದರ ಆಹಾರವು ಧರ್ಮಸಮ್ಮತ-ವಾಗಿದೆ. ಇದು ನಿಮಗೆ ಮತ್ತು ಪ್ರಯಾಣಿಕರಿಗೆ ಒಂದು ಅನುಕೂ-ಲವಾಗಿರುವುದಕ್ಕಾಗಿ. ನೀವು ಇಹ್ರಾಮ್‌ನಲ್ಲಿರುವ ತನಕ ನಿಮಗೆ ನೆಲದಲ್ಲಿ ಬೇಟೆಯಾಡುವುದನ್ನು ನಿಷೇಧಿಸಲಾಗಿದೆ. ಯಾರ ಬಳಿಗೆ ನಿಮ್ಮನ್ನು ಒಟ್ಟುಗೂಡಿಸಲಾಗುತ್ತದೋ ಆ ಅಲ್ಲಾಹನನ್ನು ಭಯಪಡಿರಿ.

---

جَعَلَ ٱللَّهُ ٱلۡكَعۡبَةَ ٱلۡبَيۡتَ ٱلۡحَرَامَ قِيَٰمٗا لِّلنَّاسِ وَٱلشَّهۡرَ ٱلۡحَرَامَ وَٱلۡهَدۡيَ وَٱلۡقَلَٰٓئِدَۚ ذَٰلِكَ لِتَعۡلَمُوٓاْ أَنَّ ٱللَّهَ يَعۡلَمُ مَا فِي ٱلسَّمَٰوَٰتِ وَمَا فِي ٱلۡأَرۡضِ وَأَنَّ ٱللَّهَ بِكُلِّ شَيۡءٍ عَلِيمٌ ٩٧

97. ಪವಿತ್ರ ಭವನವಾದ ಕಅಬಾಲಯವನ್ನು ಮತ್ತು ಯುದ್ಧ ನಿಷೇಧಿತ ತಿಂಗಳನ್ನು ಅಲ್ಲಾಹು ಜನರ ಅಸ್ತಿತ್ವಕ್ಕೆ ಆಧಾರವಾಗಿ ಮಾಡಿದ್ದಾನೆ. (ಅದೇ ರೀತಿ) ಬಲಿಮೃಗವನ್ನು ಮತ್ತು (ಅವುಗಳ) ಕೊರಳಪ-ಟ್ಟಿಗಳನ್ನು ಸಹ. ಇದೇಕೆಂದರೆ, ನಿಶ್ಚಯವಾಗಿಯೂ ಭೂಮ್ಯಾ-ಕಾಶಗಳಲ್ಲಿರುವುದೆಲ್ಲವನ್ನೂ ಅಲ್ಲಾಹು ತಿಳಿದಿದ್ದಾನೆ ಮತ್ತು ನಿಶ್ಚಯವಾಗಿಯೂ ಅಲ್ಲಾಹನಿಗೆ ಎಲ್ಲಾ ವಿಷಯಗಳ ಬಗ್ಗೆ ಸಂಪೂರ್ಣ ಜ್ಞಾನವಿದೆಯೆಂದು ನೀವು ತಿಳಿಯುವುದಕ್ಕಾಗಿದೆ.

---

ٱعۡلَمُوٓاْ أَنَّ ٱللَّهَ شَدِيدُ ٱلۡعِقَابِ وَأَنَّ ٱللَّهَ غَفُورٞ رَّحِيمٞ ٩٨

98. ತಿಳಿಯಿರಿ! ಅಲ್ಲಾಹು ಕಠೋರವಾಗಿ ಶಿಕ್ಷಿಸುವವನಾಗಿ-ದ್ದಾನೆ ಮತ್ತು ಅಲ್ಲಾಹು ಕ್ಷಮಿಸುವವನು ಹಾಗೂ ದಯೆ ತೋರುವವನಾಗಿದ್ದಾನೆ.

---

مَّا عَلَى ٱلرَّسُولِ إِلَّا ٱلۡبَلَٰغُۗ وَٱللَّهُ يَعۡلَمُ مَا تُبۡدُونَ وَمَا تَكۡتُمُونَ ٩٩

99. ಸಂದೇಶವಾಹಕರ ಕರ್ತವ್ಯವು ಸಂದೇಶವನ್ನು ತಲುಪಿಸಿಕೊಡುವುದು ಮಾತ್ರ. ನೀವು ಬಹಿರಂಗಪಡಿಸುವುದನ್ನು ಹಾಗೂ ರಹಸ್ಯವಾಗಿಡುವುದನ್ನು ಅಲ್ಲಾಹು ತಿಳಿಯುತ್ತಾನೆ.

---

[1] ಇಹ್ರಾಮ್‌ನಲ್ಲಿರುವಾಗ ಉದ್ದೇಶಪೂರ್ವಕ ಬೇಟೆಯಾಡಿದರೆ, ಅದಕ್ಕೆ ನೀಡಬೇಕಾದ ಪರಿಹಾರವೇನೆಂದರೆ, ಕೊಂದ ಪ್ರಾಣಿಗೆ ಸಮಾನವೆಂದು ಇಬ್ಬರು ನ್ಯಾಯಸಮ್ಮತ ವ್ಯಕ್ತಿಗಳು ತೀರ್ಪು ನೀಡುವ ಜಾನುವಾರನ್ನು (ಕುರಿ, ಹಸು, ಒಂಟೆ) ಬಲಿ ನೀಡಿ ಹರಮ್‌ನಲ್ಲಿರುವ ಬಡವರಿಗೆ ಹಂಚುವುದು. ಸಮಾನವಾದ ಜಾನುವಾರು ಸಿಗದಿದ್ದರೆ, ಆ ಜಾನುವಾರಿನ ಮೌಲ್ಯದ ಆಹಾರವನ್ನು ಒಬ್ಬ ಬಡವನಿಗೆ ಅರ್ಧ ಸಾಅ್ ಎಂಬಂತೆ ದಾನ ಮಾಡುವುದು. ಅಥವಾ ಪ್ರತಿ ಅರ್ಧ ಸಾಅ್‌ಗೆ ಒಂದು ಉಪವಾಸ ಎಂಬಂತೆ ಉಪವಾಸ ಆಚರಿಸುವುದು.

قُل لَّا يَسۡتَوِي ٱلۡخَبِيثُ وَٱلطَّيِّبُ وَلَوۡ أَعۡجَبَكَ كَثۡرَةُ ٱلۡخَبِيثِۚ فَٱتَّقُواْ ٱللَّهَ يَٰٓأُوْلِي ٱلۡأَلۡبَٰبِ لَعَلَّكُمۡ تُفۡلِحُونَ ١٠٠

100. ಹೇಳಿರಿ: "ಹೊಲಸು ಮತ್ತು ಶುದ್ಧ ವಸ್ತುಗಳು ಸಮಾನವಲ್ಲ. ಹೊಲಸುಗಳ ಹೆಚ್ಚಳವು ನಿಮ್ಮನ್ನು ಅಚ್ಚರಿಗೊಳಿಸಿದರೂ ಸಹ!" ಆದ್ದರಿಂದ ಓ ಬುದ್ಧಿವಂತರೇ! ಅಲ್ಲಾಹನನ್ನು ಭಯಪಡಿರಿ. ನೀವು ಯಶಸ್ವಿಯಾಗುವುದಕ್ಕಾಗಿ.

يَٰٓأَيُّهَا ٱلَّذِينَ ءَامَنُواْ لَا تَسۡـَٔلُواْ عَنۡ أَشۡيَآءَ إِن تُبۡدَ لَكُمۡ تَسُؤۡكُمۡ وَإِن تَسۡـَٔلُواْ عَنۡهَا حِينَ يُنَزَّلُ ٱلۡقُرۡءَانُ تُبۡدَ لَكُمۡ عَفَا ٱللَّهُ عَنۡهَاۗ وَٱللَّهُ غَفُورٌ حَلِيمٞ ١٠١

101. ಓ ಸತ್ಯವಿಶ್ವಾಸಿಗಳೇ! ಕೆಲವು ವಿಷಯಗಳ ಬಗ್ಗೆ ನೀವು ಪ್ರಶ್ನಿಸಬೇಡಿ. ಅವುಗಳನ್ನು ನಿಮಗೆ ವಿವರಿಸಲಾದರೆ ನಿಮಗೆ ಸಂಕಷ್ಟವಾಗಬಹುದು. ಕುರ್‌ಆನ್ ಅವತೀರ್ಣವಾಗುವಾಗ ನೀವು ಅವುಗಳ ಬಗ್ಗೆ ಪ್ರಶ್ನಿಸಿದರೆ, ಅವುಗಳನ್ನು ನಿಮಗೆ ವಿವರಿಸಿಕೊಡಲಾಗುವುದು. (ಹಿಂದೆ ಸಂಭವಿಸಿದ್ದಕ್ಕೆ) ಅಲ್ಲಾಹು ನಿಮ್ಮನ್ನು ಕ್ಷಮಿಸಿದ್ದಾನೆ. ಅಲ್ಲಾಹು ಕ್ಷಮಿಸುವವನು ಮತ್ತು ಸಹಿಷ್ಣುತೆಯುಳ್ಳನಾಗಿದ್ದಾನೆ.

قَدۡ سَأَلَهَا قَوۡمٞ مِّن قَبۡلِكُمۡ ثُمَّ أَصۡبَحُواْ بِهَا كَٰفِرِينَ ١٠٢

102. ನಿಮಗಿಂತ ಮೊದಲಿನ ಜನರು ಅವುಗಳ ಬಗ್ಗೆ ಪ್ರಶ್ನಿಸಿದ್ದರು. ನಂತರ ಅವುಗಳ ಕಾರಣದಿಂದ ಅವರು ಸತ್ಯನಿಷೇಧಿಗಳಾದರು.

مَا جَعَلَ ٱللَّهُ مِنۢ بَحِيرَةٖ وَلَا سَآئِبَةٖ وَلَا وَصِيلَةٖ وَلَا حَامٖ وَلَٰكِنَّ ٱلَّذِينَ كَفَرُواْ يَفۡتَرُونَ عَلَى ٱللَّهِ ٱلۡكَذِبَۖ وَأَكۡثَرُهُمۡ لَا يَعۡقِلُونَ ١٠٣

103. ಬಹೀರ, ಸಾಇಬ, ವಸೀಲ, ಹಾಮ್ ಮುಂತಾದ ಹರಕೆ ಮೃಗಗಳನ್ನು ಅಲ್ಲಾಹು ನೇಮಿಸಿಲ್ಲ.[1] ಆದರೆ ಸತ್ಯನಿಷೇಧಿಗಳು ಅಲ್ಲಾಹನ ಮೇಲೆ ಸುಳ್ಳು ಆರೋಪಿಸುತ್ತಿದ್ದಾರೆ. ಅವರಲ್ಲಿ ಹೆಚ್ಚಿನವರೂ ಅರ್ಥಮಾಡಿಕೊಳ್ಳದವರಾಗಿದ್ದಾರೆ.

وَإِذَا قِيلَ لَهُمۡ تَعَالَوۡاْ إِلَىٰ مَآ أَنزَلَ ٱللَّهُ وَإِلَى ٱلرَّسُولِ قَالُواْ حَسۡبُنَا مَا وَجَدۡنَا عَلَيۡهِ ءَابَآءَنَآۚ أَوَلَوۡ كَانَ ءَابَآؤُهُمۡ لَا يَعۡلَمُونَ شَيۡـٔٗا وَلَا يَهۡتَدُونَ ١٠٤

104. "ಅಲ್ಲಾಹು ಅವತೀರ್ಣಗೊಳಿಸಿದ ಸಂದೇಶಕ್ಕೆ ಮತ್ತು ಸಂದೇಶವಾಹಕರ ಬಳಿಗೆ ಬನ್ನಿರಿ" ಎಂದು ಅವರೊಡನೆ ಹೇಳಲಾದರೆ, ಅವರು ಹೇಳುತ್ತಾರೆ: "ನಮ್ಮ ಪೂರ್ವಜರು ಏನು ಮಾಡುವುದಾಗಿ ನಾವು ಕಂಡೆವೋ ಅದು ನಮಗೆ ಸಾಕು." ಆದರೆ ಅವರ ಪೂರ್ವಜರು ಏನೂ ತಿಳಿಯದವರು ಮತ್ತು ಸನ್ಮಾರ್ಗ ಪಡೆಯದವರಾಗಿದ್ದರೂ ಸಹ (ಅವರಿಗೆ ಅದು ಸಾಕೇ?)

يَٰٓأَيُّهَا ٱلَّذِينَ ءَامَنُواْ عَلَيۡكُمۡ أَنفُسَكُمۡۖ لَا يَضُرُّكُم مَّن ضَلَّ إِذَا ٱهۡتَدَيۡتُمۡۚ إِلَى ٱللَّهِ مَرۡجِعُكُمۡ جَمِيعٗا فَيُنَبِّئُكُم

105. ಓ ಸತ್ಯವಿಶ್ವಾಸಿಗಳೇ! ನೀವು ನಿಮ್ಮ ಬಗ್ಗೆ ಜಾಗರೂಕರಾಗಿರಿ. ನೀವು ಸನ್ಮಾರ್ಗಿಗಳಾದರೆ, ದುರ್ಮಾರ್ಗದಲ್ಲಿರುವವರು ನಿಮಗೆ ಯಾವುದೇ ತೊಂದರೆ ಮಾಡಲಾರರು. ನೀವೆಲ್ಲರೂ ಅಲ್ಲಾಹನ

[1] ಅನೇಕ ಮರಿಗಳಿಗೆ ಜನ್ಮ ನೀಡಿದ ಜಾನುವಾರಿನ ಕಿವಿಯನ್ನು ಹರಿದು ಮಕ್ಕಾದ ಬಹುದೇವಾರಾಧಕರು ಅದನ್ನು ವಿಗ್ರಹಗಳಿಗೆ ಹರಕೆ ಮಾಡುತ್ತಿದ್ದರು. ಅವರು ಅದನ್ನು ಬಹೀರ ಎಂದು ಕರೆಯುತ್ತಿದ್ದರು. ಕೆಲವು ಜಾನುವಾರುಗಳನ್ನು ಅವರು ವಿಗ್ರಹಗಳಿಗೆ ಹರಕೆ ಮಾಡಿ ಬಿಟ್ಟು ಬಿಡುತ್ತಿದ್ದರು. ಯಾರೂ ಅದನ್ನು ಮುಟ್ಟುತ್ತಿರಲಿಲ್ಲ ಮತ್ತು ತೊಂದರೆ ಕೊಡುತ್ತಿರಲಿಲ್ಲ. ಅವರು ಅದನ್ನು ಸಾಇಬ ಎಂದು ಕರೆಯುತ್ತಿದ್ದರು. ಒಂದು ಪ್ರಾಣಿ ನಿರಂತರ ಹೆಣ್ಣು ಮರಿಗಳಿಗೆ ಜನ್ಮ ನೀಡಿದರೆ ಅವರು ಅದನ್ನು ವಸೀಲ ಎಂದು ಕರೆದು ವಿಗ್ರಹಗಳಿಗೆ ಹರಕೆ ಮಾಡುತ್ತಿದ್ದರು. ಒಂದು ಗಂಡು ಒಂಟೆಯಿಂದ ಅನೇಕ ಮರಿಗಳುಂಟಾದರೆ ಅವರು ಅದನ್ನು ಹಾಮ್ ಎಂದು ಕರೆದು ಹರಕೆ ಮಾಡುತ್ತಿದ್ದರು.

بِمَا كُنتُمْ تَعْمَلُونَ ١٠٥

ಬಳಿಗೆ ಮರಳಿಹೋಗುವಿರಿ. ಆಗ ಅವನು ನೀವು ಮಾಡಿದ ಕರ್ಮಗಳನ್ನು ನಿಮಗೆ ತಿಳಿಸಿಕೊಡುವನು.

---

يَٰٓأَيُّهَا ٱلَّذِينَ ءَامَنُوا۟ شَهَٰدَةُ بَيْنِكُمْ إِذَا حَضَرَ
أَحَدَكُمُ ٱلْمَوْتُ حِينَ ٱلْوَصِيَّةِ ٱثْنَانِ ذَوَا
عَدْلٍ مِّنكُمْ أَوْ ءَاخَرَانِ مِنْ غَيْرِكُمْ إِنْ أَنتُمْ
ضَرَبْتُمْ فِى ٱلْأَرْضِ فَأَصَٰبَتْكُم مُّصِيبَةُ ٱلْمَوْتِ ۚ
تَحْبِسُونَهُمَا مِنۢ بَعْدِ ٱلصَّلَوٰةِ فَيُقْسِمَانِ بِٱللَّهِ
إِنِ ٱرْتَبْتُمْ لَا نَشْتَرِى بِهِۦ ثَمَنًا وَلَوْ كَانَ ذَا
قُرْبَىٰ ۙ وَلَا نَكْتُمُ شَهَٰدَةَ ٱللَّهِ إِنَّآ إِذًا لَّمِنَ
ٱلْءَاثِمِينَ ١٠٦

106. ಓ ಸತ್ಯವಿಶ್ವಾಸಿಗಳೇ! ನಿಮ್ಮಲ್ಲೊಬ್ಬನು ಮರಣಶಯ್ಯೆಯಲ್ಲಿದ್ದು ಉಯಿಲು ಮಾಡುವಾಗ, ನಿಮ್ಮಲ್ಲಿನ ಇಬ್ಬರು ನ್ಯಾಯವಂತರು ಅಥವಾ ನಿಮ್ಮವರಲ್ಲದ ಇಬ್ಬರು ಸಾಕ್ಷಿ ನಿಲ್ಲಲಿ—ನೀವು ಭೂಮಿಯಲ್ಲಿ ಪ್ರಯಾಣ ಮಾಡುತ್ತಿರುವಾಗ ನಿಮಗೆ ಮರಣವು ಸನ್ನಿಹಿತವಾದರೆ. ಇನ್ನು ನಿಮಗೆ (ಅವರ ಸಾಕ್ಷಿಯಲ್ಲಿ) ಸಂಶಯವಾದರೆ ನಮಾಝ್ ನಿರ್ವಹಿಸಿದ ನಂತರ ಅವರಿಬ್ಬರನ್ನು ತಡೆದು ನಿಲ್ಲಿಸಿರಿ; ಆಗ ಅವರು ಅಲ್ಲಾಹನ ಮೇಲೆ ಆಣೆ ಮಾಡಿ ಹೀಗೆ ಹೇಳಲಿ: “ನಾವು ಈ ಸಾಕ್ಷಿಗೆ ಬದಲಿಯಾಗಿ ಯಾವುದೇ ಬೆಲೆಯನ್ನು ಪಡೆಯುವುದಿಲ್ಲ, ಅವನು ಹತ್ತಿರದ ಸಂಬಂಧಿಕನಾದರೂ ಸಹ. ಅಲ್ಲಾಹನಿಗಾಗಿರುವ ಸಾಕ್ಷ್ಯವನ್ನು ನಾವು ಅಡಗಿಸುವುದಿಲ್ಲ. ನಾವೇನಾದರೂ ಹಾಗೆ ಮಾಡಿದರೆ ನಿಶ್ಚಯವಾಗಿಯೂ ನಾವು ಪಾಪಿಗಳಲ್ಲಿ ಸೇರುವೆವು.”

---

فَإِنْ عُثِرَ عَلَىٰٓ أَنَّهُمَا ٱسْتَحَقَّآ إِثْمًا فَـَٔاخَرَانِ
يَقُومَانِ مَقَامَهُمَا مِنَ ٱلَّذِينَ ٱسْتَحَقَّ عَلَيْهِمُ
ٱلْأَوْلَيَٰنِ فَيُقْسِمَانِ بِٱللَّهِ لَشَهَٰدَتُنَآ أَحَقُّ
مِن شَهَٰدَتِهِمَا وَمَا ٱعْتَدَيْنَآ إِنَّآ إِذًا لَّمِنَ
ٱلظَّٰلِمِينَ ١٠٧

107. ಅವರಿಬ್ಬರು ದೋಷಿಗಳೆಂದು ಸಾಬೀತಾದರೆ, ಅವರು ಯಾರಿಗೆ ಅನ್ಯಾಯ ಮಾಡಿದರೋ ಅವರ ಪೈಕಿ ಮೃತ ವ್ಯಕ್ತಿಗೆ ಹೆಚ್ಚು ಆಪ್ತರಾಗಿರುವ ಇಬ್ಬರು ಅವರ ಸ್ಥಾನದಲ್ಲಿ ನಿಂತು, ಅಲ್ಲಾಹನ ಮೇಲೆ ಆಣೆ ಮಾಡಿ, “ಅವರ ಸಾಕ್ಷಿಗಿಂತ ನಮ್ಮ ಸಾಕ್ಷಿಯೇ ಹೆಚ್ಚು ಸತ್ಯವಾಗಿದೆ, ನಾವು ಯಾವುದೇ ಅತಿರೇಕವನ್ನೆಸಗಿಲ್ಲ; ನಾವೇನಾದರೂ ಹಾಗೆ ಮಾಡಿದರೆ ನಾವು ಅಕ್ರಮವೆಸಗಿದವರಲ್ಲಿ ಸೇರುವೆವು” ಎಂದು ಸಾಕ್ಷಿ ಹೇಳಲಿ.

---

ذَٰلِكَ أَدْنَىٰٓ أَن يَأْتُوا۟ بِٱلشَّهَٰدَةِ عَلَىٰ وَجْهِهَآ أَوْ
يَخَافُوٓا۟ أَن تُرَدَّ أَيْمَٰنٌۢ بَعْدَ أَيْمَٰنِهِمْ ۗ وَٱتَّقُوا۟ ٱللَّهَ
وَٱسْمَعُوا۟ ۗ وَٱللَّهُ لَا يَهْدِى ٱلْقَوْمَ ٱلْفَٰسِقِينَ ١٠٨

108. ಅವರು ಸರಿಯಾದ ವಿಧದಲ್ಲಿ ಸಾಕ್ಷಿ ನುಡಿಯಲು, ಅಥವಾ ಅವರು ಆಣೆ ಮಾಡಿದ ಬಳಿಕ (ವಾರಸುದಾರರಿಗೆ) ಆಣೆ ಮಾಡಲು ಅವಕಾಶ ನೀಡಲಾಗುವುದೆಂಬ ಭಯವು ಅವರಲ್ಲುಂಟಾಗಲು ಇದು ಹೆಚ್ಚು ಸೂಕ್ತವಾಗಿದೆ. ನೀವು ಅಲ್ಲಾಹನನ್ನು ಭಯಪಡಿರಿ ಮತ್ತು (ಅವನ ಆದೇಶಗಳಿಗೆ) ಕಿವಿಗೊಡಿರಿ. ವಿಧೇಯತೆಯಿಲ್ಲದ ಜನರಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ.

---

يَوْمَ يَجْمَعُ ٱللَّهُ ٱلرُّسُلَ فَيَقُولُ مَاذَآ أُجِبْتُمْ ۖ قَالُوا۟
لَا عِلْمَ لَنَآ ۖ إِنَّكَ أَنتَ عَلَّٰمُ ٱلْغُيُوبِ ١٠٩

109. ಅಲ್ಲಾಹು ಸಂದೇಶವಾಹಕರನ್ನು ಒಟ್ಟುಗೂಡಿಸಿ, “ನಿಮಗೇನು ಉತ್ತರ ಸಿಕ್ಕಿತು?” ಎಂದು ಕೇಳುವ ದಿನ. ಅವರು ಹೇಳುವರು: “ನಮಗೇನೂ ತಿಳಿದಿಲ್ಲ. ನೀನೇ ಅದೃಶ್ಯ ವಿಷಯಗಳನ್ನು ಚೆನ್ನಾಗಿ ತಿಳಿದವನು.”

110. ಅಲ್ಲಾಹು (ಈಸಾರೊಂದಿಗೆ) ಹೇಳುವ ಸಂದರ್ಭ: "ಓ ಮರ್ಯಮರ ಮಗ ಈಸಾ! ನಾನು ಪವಿತ್ರಾತ್ಮನ ಮೂಲಕ ನಿಮಗೆ ಬೆಂಬಲ ನೀಡಿ ನೀವು ತೊಟ್ಟಿಲಲ್ಲಿಯೂ ಮಧ್ಯವಯಸ್ಸಿನಲ್ಲಿಯೂ ಜನರೊಂದಿಗೆ ಮಾತನಾಡುತ್ತಿದ್ದ ಸಂದರ್ಭ; ನಾನು ನಿಮಗೆ ಗ್ರಂಥವನ್ನು, ವಿವೇಕವನ್ನು, ತೌರಾತ್ ಮತ್ತು ಇಂಜೀಲನ್ನು ಕಲಿಸಿಕೊಟ್ಟ ಸಂದರ್ಭ; ನನ್ನ ಅಪ್ಪಣೆಯಂತೆ ನೀವು ಜೇಡಿಮಣ್ಣಿನಿಂದ ಹಕ್ಕಿಯ ರೂಪವನ್ನು ತಯಾರಿಸಿ ಅದರಲ್ಲಿ ಊದಿದಾಗ ನನ್ನ ಅಪ್ಪಣೆಯಿಂದ ಅದು ಹಕ್ಕಿಯಾಗಿ ಮಾರ್ಪಡುತ್ತಿದ್ದ ಸಂದರ್ಭ; ನನ್ನ ಅಪ್ಪಣೆಯಂತೆ ನೀವು ಹುಟ್ಟು ಕುರುಡನನ್ನು ಮತ್ತು ಕುಷ್ಠರೋಗಿಯನ್ನು ಗುಣಪಡಿಸುತ್ತಿದ್ದ ಸಂದರ್ಭ; ನನ್ನ ಅಪ್ಪಣೆಯಂತೆ ನೀವು ಸತ್ತವರನ್ನು (ಸಮಾಧಿಯಿಂದ) ಹೊರತರುತ್ತಿದ್ದ ಸಂದರ್ಭ ಮತ್ತು ನೀವು ಇಸ್ರಾಯೇಲ್ ಮಕ್ಕಳ ಬಳಿಗೆ ಸ್ಪಷ್ಟ ಸಾಕ್ಷ್ಯಾಧಾರಗಳೊಂದಿಗೆ ಹೋದಾಗ ಅವರಲ್ಲಿರುವ ಸತ್ಯನಿಷೇಧಿಗಳು, ಇದು ಸ್ಪಷ್ಟ ವಾಮಾಚಾರವಾಗಿದೆಯೆಂದು ಹೇಳಿದಾಗ ನಿಮ್ಮನ್ನು ಅವರಿಂದ ಪಾರು ಮಾಡಿದ ಸಂದರ್ಭ ನಾನು ನಿಮಗೆ ಮತ್ತು ನಿಮ್ಮ ತಾಯಿಗೆ ಅನುಗ್ರಹಿಸಿದ ಅನುಗ್ರಹಗಳನ್ನು ಸ್ಮರಿಸಿರಿ."

إِذۡ قَالَ ٱللَّهُ يَٰعِيسَى ٱبۡنَ مَرۡيَمَ ٱذۡكُرۡ نِعۡمَتِي
عَلَيۡكَ وَعَلَىٰ وَٰلِدَتِكَ إِذۡ أَيَّدتُّكَ بِرُوحِ ٱلۡقُدُسِ
تُكَلِّمُ ٱلنَّاسَ فِي ٱلۡمَهۡدِ وَكَهۡلٗاۖ وَإِذۡ عَلَّمۡتُكَ
ٱلۡكِتَٰبَ وَٱلۡحِكۡمَةَ وَٱلتَّوۡرَىٰةَ وَٱلۡإِنجِيلَۖ وَإِذۡ
تَخۡلُقُ مِنَ ٱلطِّينِ كَهَيۡـَٔةِ ٱلطَّيۡرِ بِإِذۡنِي فَتَنفُخُ
فِيهَا فَتَكُونُ طَيۡرَۢا بِإِذۡنِيۖ وَتُبۡرِئُ ٱلۡأَكۡمَهَ
وَٱلۡأَبۡرَصَ بِإِذۡنِيۖ وَإِذۡ تُخۡرِجُ ٱلۡمَوۡتَىٰ بِإِذۡنِيۖ
وَإِذۡ كَفَفۡتُ بَنِيٓ إِسۡرَٰٓءِيلَ عَنكَ إِذۡ جِئۡتَهُم
بِٱلۡبَيِّنَٰتِ فَقَالَ ٱلَّذِينَ كَفَرُواْ مِنۡهُمۡ إِنۡ هَٰذَآ
إِلَّا سِحۡرٞ مُّبِينٞ ١١٠

111. "ನನ್ನಲ್ಲಿ ಮತ್ತು ನನ್ನ ಸಂದೇಶವಾಹಕರಲ್ಲಿ ವಿಶ್ವಾಸವಿಡಿ" ಎಂದು ನಾನು ಹವಾರಿಗಳಿಗೆ ದಿವ್ಯಪ್ರೇರಣೆ ನೀಡಿದ ಸಂದರ್ಭ. ಅವರು ಹೇಳಿದರು: "ನಾವು ವಿಶ್ವಾಸವಿಟ್ಟಿದ್ದೇವೆ. ನಾವು ಮುಸ್ಲಿಮರು ಎಂಬುದಕ್ಕೆ ನೀವು ಸಾಕ್ಷಿಯಾಗಿರಿ."

وَإِذۡ أَوۡحَيۡتُ إِلَى ٱلۡحَوَارِيِّـۧنَ أَنۡ ءَامِنُواْ
بِي وَبِرَسُولِي قَالُوٓاْ ءَامَنَّا وَٱشۡهَدۡ بِأَنَّنَا
مُسۡلِمُونَ ١١١

112. ಹವಾರಿಗಳು ಹೇಳಿದ ಸಂದರ್ಭ(ವನ್ನು ಸ್ಮರಿಸಿ): "ಓ ಮರ್ಯಮರ ಮಗ ಈಸಾ! ನಮಗೆ ಆಕಾಶದಿಂದ ಒಂದು ಆಹಾರದ ತಟ್ಟೆಯನ್ನು ಇಳಿಸಿಕೊಡಲು ನಿಮ್ಮ ಪರಿಪಾಲಕನಿಗೆ (ಅಲ್ಲಾಹನಿಗೆ) ಸಾಧ್ಯವೇ?" ಈಸಾ ಹೇಳಿದರು: "ನೀವು ಸತ್ಯವಿಶ್ವಾಸಿಗಳಾಗಿದ್ದರೆ ಅಲ್ಲಾಹನನ್ನು ಭಯಪಡಿರಿ."

إِذۡ قَالَ ٱلۡحَوَارِيُّونَ يَٰعِيسَى ٱبۡنَ مَرۡيَمَ هَلۡ
يَسۡتَطِيعُ رَبُّكَ أَن يُنَزِّلَ عَلَيۡنَا مَآئِدَةٗ مِّنَ
ٱلسَّمَآءِۖ قَالَ ٱتَّقُواْ ٱللَّهَ إِن كُنتُم مُّؤۡمِنِينَ ١١٢

113. ಅವರು ಹೇಳಿದರು: "ಅದರಿಂದ ಆಹಾರ ಸೇವಿಸಿ ನಮ್ಮ ಮನಸ್ಸನ್ನು ಸಮಾಧಾನಪಡಿಸಲು, ನೀವು ನಮಗೆ ತಿಳಿಸಿದ್ದೆಲ್ಲವೂ ಸತ್ಯವೆಂದು ಮನದಟ್ಟು ಮಾಡಿಕೊಳ್ಳಲು ಮತ್ತು ನಾವು ಅದಕ್ಕೆ ಸಾಕ್ಷಿಗಳಾಗಲು ಬಯಸುತ್ತೇವೆ."

قَالُواْ نُرِيدُ أَن نَّأۡكُلَ مِنۡهَا وَتَطۡمَئِنَّ قُلُوبُنَا
وَنَعۡلَمَ أَن قَدۡ صَدَقۡتَنَا وَنَكُونَ عَلَيۡهَا مِنَ
ٱلشَّٰهِدِينَ ١١٣

114. ಮರ್ಯಮರ ಮಗ ಈಸಾ ಹೇಳಿದರು: "ಓ ನಮ್ಮ ಪರಿಪಾಲಕನಾದ ಅಲ್ಲಾಹನೇ! ನಮಗೆ ಆಕಾಶದಿಂದ

قَالَ عِيسَى ٱبۡنُ مَرۡيَمَ ٱللَّهُمَّ رَبَّنَآ أَنزِلۡ عَلَيۡنَا
مَآئِدَةٗ مِّنَ ٱلسَّمَآءِ تَكُونُ لَنَا عِيدٗا لِّأَوَّلِنَا

ಒಂದು ಆಹಾರದ ತಟ್ಟೆಯನ್ನು ಇಳಿಸಿಕೊಡು. ಅದು ನಮ್ಮಲ್ಲಿ ಮೊದಲಿನವರಿಗೆ ಮತ್ತು ಕೊನೆಯವರಿಗೆ ಒಂದು ಹಬ್ಬವಾಗಲಿ ಮತ್ತು ನಿನ್ನ ಕಡೆಯ ಒಂದು ದೃಷ್ಟಾಂತವಾಗಲಿ. ನಮಗೆ ಆಹಾರವನ್ನು ನೀಡು. ಆಹಾರ ನೀಡುವವರಲ್ಲಿ ನೀನು ಅತ್ಯುತ್ತಮನಾಗಿರುವೆ."

وَءَاخِرِنَا وَءَايَةً مِّنكَۖ وَٱرۡزُقۡنَا وَأَنتَ خَيۡرُ ٱلرَّٰزِقِينَ ١١٤

---

115. ಅಲ್ಲಾಹು ಹೇಳಿದನು: "ನಿಶ್ಚಯವಾಗಿಯೂ ನಾನು ನಿಮಗೆ ಅದನ್ನು ಇಳಿಸಿಕೊಡುವೆನು. ಆದರೆ, ಅದರ ನಂತರವೂ ನಿಮ್ಮಲ್ಲಿ ಯಾರಾದರೂ ಸತ್ಯನಿಷೇಧಿಯಾದರೆ, ಸರ್ವಲೋಕದವ-ರಲ್ಲಿ ಯಾರಿಗೂ ನೀಡದ ಕಠೋರ ಶಿಕ್ಷೆಯನ್ನು ನಾನು ಅವನಿಗೆ ನೀಡುವೆನು."

قَالَ ٱللَّهُ إِنِّي مُنَزِّلُهَا عَلَيۡكُمۡۖ فَمَن يَكۡفُرۡ بَعۡدُ مِنكُمۡ فَإِنِّيٓ أُعَذِّبُهُۥ عَذَابٗا لَّآ أُعَذِّبُهُۥٓ أَحَدٗا مِّنَ ٱلۡعَٰلَمِينَ ١١٥

---

116. ಅಲ್ಲಾಹು ಹೇಳುವ ಸಂದರ್ಭ: "ಓ ಮರ್ಯಮರ ಮಗ ಈಸಾ! ಅಲ್ಲಾಹನನ್ನು ಬಿಟ್ಟು ನನ್ನನ್ನು ಮತ್ತು ನನ್ನ ತಾಯಿಯನ್ನು ದೇವರಾಗಿ ಸ್ವೀಕರಿಸಿರಿ ಎಂದು ನೀವು ಜನರಿಗೆ ಹೇಳಿದ್ದೀರಾ?" ಈಸಾ ಹೇಳುವರು: "ನೀನು ಮಹಾ ಪರಿಶುದ್ಧನು. ನನಗೆ ಹೇಳಲು ಹಕ್ಕಿಲ್ಲದ ಒಂದು ಮಾತನ್ನು ನಾನು ಹೇಗೆ ಹೇಳುವೆನು? ನಾನು ಹಾಗೆ ಹೇಳಿದ್ದರೆ ನಿಶ್ಚಯವಾಗಿಯೂ ನಿನಗೆ ಅದು ತಿಳಿದಿರುತ್ತಿತ್ತು. ನನ್ನ ಮನಸ್ಸಿನಲ್ಲಿರುವುದು ನಿನಗೆ ತಿಳಿಯುತ್ತದೆ. ಆದರೆ ನಿನ್ನ ಮನಸ್ಸಿನಲ್ಲಿರುವುದು ನನಗೆ ತಿಳಿಯುವುದಿಲ್ಲ. ನಿಶ್ಚಯವಾಗಿಯೂ ನೀನು ಅದೃಶ್ಯ ವಿಷಯಗಳನ್ನು ತಿಳಿದವನಾಗಿರುವೆ.

وَإِذۡ قَالَ ٱللَّهُ يَٰعِيسَى ٱبۡنَ مَرۡيَمَ ءَأَنتَ قُلۡتَ لِلنَّاسِ ٱتَّخِذُونِي وَأُمِّيَ إِلَٰهَيۡنِ مِن دُونِ ٱللَّهِۖ قَالَ سُبۡحَٰنَكَ مَا يَكُونُ لِيٓ أَنۡ أَقُولَ مَا لَيۡسَ لِي بِحَقٍّۚ إِن كُنتُ قُلۡتُهُۥ فَقَدۡ عَلِمۡتَهُۥۚ تَعۡلَمُ مَا فِي نَفۡسِي وَلَآ أَعۡلَمُ مَا فِي نَفۡسِكَۚ إِنَّكَ أَنتَ عَلَّٰمُ ٱلۡغُيُوبِ ١١٦

---

117. ನೀನು ನನಗೆ ಆದೇಶಿಸಿದ್ದನ್ನು—ಅಂದರೆ ನನ್ನ ಮತ್ತು ನಿಮ್ಮ ಪರಿಪಾಲಕನಾದ ಅಲ್ಲಾಹನನ್ನು ಮಾತ್ರ ಆರಾಧಿಸಿರಿ ಎಂಬುದನ್ನು ಬಿಟ್ಟು ಬೇರೇನನ್ನೂ ನಾನು ಅವರಿಗೆ ಹೇಳಿಲ್ಲ. ನಾನು ಎಲ್ಲಿಯ ತನಕ ಅವರೊಂದಿಗೆ ಇದ್ದೆನೋ ಅಲ್ಲಿಯ ತನಕ ನಾನು ಅವರ ಮೇಲೆ ಸಾಕ್ಷಿಯಾಗಿದ್ದೆ. ನಂತರ ನೀನು ನನ್ನನ್ನು ಎತ್ತಿಕೊಂಡ ಬಳಿಕ ನೀನೇ ಅವರ ವೀಕ್ಷಕನಾಗಿದ್ದೆ. ನೀನು ಎಲ್ಲಾ ವಿಷಯಗಳಿಗೂ ಸಾಕ್ಷಿಯಾಗಿರುವೆ.

مَا قُلۡتُ لَهُمۡ إِلَّا مَآ أَمَرۡتَنِي بِهِۦٓ أَنِ ٱعۡبُدُواْ ٱللَّهَ رَبِّي وَرَبَّكُمۡۚ وَكُنتُ عَلَيۡهِمۡ شَهِيدٗا مَّا دُمۡتُ فِيهِمۡۖ فَلَمَّا تَوَفَّيۡتَنِي كُنتَ أَنتَ ٱلرَّقِيبَ عَلَيۡهِمۡۚ وَأَنتَ عَلَىٰ كُلِّ شَيۡءٖ شَهِيدٌ ١١٧

---

118. ನೀನು ಅವರನ್ನು ಶಿಕ್ಷಿಸುವುದಾದರೆ ನಿಶ್ಚಯವಾಗಿಯೂ ಅವರು ನಿನ್ನ ದಾಸರಾಗಿದ್ದಾರೆ. ಆದರೆ ನೀನು ಅವರನ್ನು ಕ್ಷಮಿಸುವುದಾದರೆ, ನಿಶ್ಚಯವಾಗಿಯೂ ನೀನು ಪ್ರಬಲನು ಮತ್ತು ವಿವೇಕಪೂರ್ಣನಾಗಿರುವೆ."

إِن تُعَذِّبۡهُمۡ فَإِنَّهُمۡ عِبَادُكَۖ وَإِن تَغۡفِرۡ لَهُمۡ فَإِنَّكَ أَنتَ ٱلۡعَزِيزُ ٱلۡحَكِيمُ ١١٨

---

119. ಅಲ್ಲಾಹು ಹೇಳುವನು: "ಇದು ಸತ್ಯವಂತರಿಗೆ ಅವರ ಸತ್ಯವು ಪ್ರಯೋಜನ ನೀಡುವ ದಿನವಾಗಿದೆ. ಅವರಿಗೆ ತಳಭಾಗದಿಂದ

قَالَ ٱللَّهُ هَٰذَا يَوۡمُ يَنفَعُ ٱلصَّٰدِقِينَ صِدۡقُهُمۡۚ

لَهُمْ جَنَّٰتٌ تَجْرِى مِن تَحْتِهَا ٱلْأَنْهَٰرُ خَٰلِدِينَ فِيهَآ أَبَدًا ۚ رَّضِىَ ٱللَّهُ عَنْهُمْ وَرَضُوا۟ عَنْهُ ۚ ذَٰلِكَ ٱلْفَوْزُ ٱلْعَظِيمُ ﴿١١٩﴾

ನದಿಗಳು ಹರಿಯುವ ಸ್ವರ್ಗೋದ್ಯಾನಗಳಿವೆ. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅಲ್ಲಾಹು ಅವರ ಬಗ್ಗೆ ಸಂಪ್ರೀತ-ನಾಗಿದ್ದಾನೆ ಮತ್ತು ಅವರು ಅಲ್ಲಾಹನ ಬಗ್ಗೆ ಸಂಪ್ರೀತರಾಗಿದ್ದಾರೆ. ಅದೇ ಮಹಾ ವಿಜಯ."

لِلَّهِ مُلْكُ ٱلسَّمَٰوَٰتِ وَٱلْأَرْضِ وَمَا فِيهِنَّ ۚ وَهُوَ عَلَىٰ كُلِّ شَىْءٍ قَدِيرٌۢ ﴿١٢٠﴾

120. ಭೂಮ್ಯಾಕಾಶಗಳ ಮತ್ತು ಅವುಗಳ ನಡುವೆಯಿರುವ ಎಲ್ಲಾ ವಸ್ತುಗಳ ಆಧಿಪತ್ಯವು ಅಲ್ಲಾಹನಿಗೆ ಸೇರಿದ್ದು. ಅಲ್ಲಾಹು ಎಲ್ಲ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

# 6. ಅಲ್-ಅನ್ಆಮ್

بِسْمِ ٱللَّهِ ٱلرَّحْمَٰنِ ٱلرَّحِيمِ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

ٱلْحَمْدُ لِلَّهِ ٱلَّذِى خَلَقَ ٱلسَّمَٰوَٰتِ وَٱلْأَرْضَ وَجَعَلَ ٱلظُّلُمَٰتِ وَٱلنُّورَ ۖ ثُمَّ ٱلَّذِينَ كَفَرُوا۟ بِرَبِّهِمْ يَعْدِلُونَ ﴿١﴾

1. ಭೂಮ್ಯಾಕಾಶಗಳನ್ನು ಸೃಷ್ಟಿಸಿದ ಮತ್ತು ಅಂಧಕಾರಗಳನ್ನು ಹಾಗೂ ಬೆಳಕನ್ನು ಉಂಟುಮಾಡಿದ ಅಲ್ಲಾಹನಿಗೆ ಸರ್ವಸ್ತುತಿ. ಆದರೂ ಸತ್ಯನಿಷೇಧಿಗಳು ತಮ್ಮ ಪರಿಪಾಲಕನಿಗೆ (ಅಲ್ಲಾಹನಿಗೆ) ಸರಿಸಮಾನರನ್ನು ಕಲ್ಪಿಸುತ್ತಿದ್ದಾರೆ.

هُوَ ٱلَّذِى خَلَقَكُم مِّن طِينٍ ثُمَّ قَضَىٰٓ أَجَلًا ۖ وَأَجَلٌ مُّسَمًّى عِندَهُۥ ۖ ثُمَّ أَنتُمْ تَمْتَرُونَ ﴿٢﴾

2. ನಿಮ್ಮನ್ನು ಜೇಡಿಮಣ್ಣಿನಿಂದ ಸೃಷ್ಟಿಸಿದವನು ಅವನೇ. ನಂತರ ಅವನು ಒಂದು ಅವಧಿಯನ್ನು ನಿಶ್ಚಯಿಸಿದನು. ಅವನ ಬಳಿ ಇನ್ನೊಂದು ನಿಶ್ಚಿತ ಅವಧಿಯಿದೆ. ಹೀಗಿದ್ದೂ ನೀವು ಸಂಶಯಪಡುತ್ತೀರಿ.

وَهُوَ ٱللَّهُ فِى ٱلسَّمَٰوَٰتِ وَفِى ٱلْأَرْضِ ۖ يَعْلَمُ سِرَّكُمْ وَجَهْرَكُمْ وَيَعْلَمُ مَا تَكْسِبُونَ ﴿٣﴾

3. ಅವನೇ ಆಕಾಶಗಳಲ್ಲಿ ಮತ್ತು ಭೂಮಿಯಲ್ಲಿರುವ ಏಕೈಕ ದೇವನಾದ ಅಲ್ಲಾಹು. ನೀವು ಮುಚ್ಚಿಡುವುದನ್ನು ಮತ್ತು ಬಹಿರಂ-ಗಪಡಿಸುವುದನ್ನು ಅವನು ತಿಳಿಯುತ್ತಾನೆ. ನೀವು ಮಾಡುವ ಕರ್ಮಗಳನ್ನೂ ಅವನು ತಿಳಿಯುತ್ತಾನೆ.

وَمَا تَأْتِيهِم مِّنْ ءَايَةٍ مِّنْ ءَايَٰتِ رَبِّهِمْ إِلَّا كَانُوا۟ عَنْهَا مُعْرِضِينَ ﴿٤﴾

4. ಅವರ ಪರಿಪಾಲಕನ (ಅಲ್ಲಾಹನ) ದೃಷ್ಟಾಂತಗಳಲ್ಲಿ ಯಾವುದೇ ಒಂದು ದೃಷ್ಟಾಂತವು ಅವರ ಬಳಿಗೆ ಬಂದರೂ, ಅವರು ಅದರಿಂದ ವಿಮುಖರಾಗುತ್ತಿದ್ದರು.

فَقَدْ كَذَّبُوا۟ بِٱلْحَقِّ لَمَّا جَآءَهُمْ ۖ فَسَوْفَ يَأْتِيهِمْ أَنۢبَٰٓؤُا۟ مَا كَانُوا۟ بِهِۦ يَسْتَهْزِءُونَ ﴿٥﴾

5. ಸತ್ಯವು ಅವರ ಬಳಿಗೆ ಬಂದಾಗ ಅವರು ಅದನ್ನು ನಿಷೇಧಿಸಿದರು. ಆದ್ದರಿಂದ ಅವರು ಯಾವುದನ್ನು ತಮಾಷೆ ಮಾಡುತ್ತಿದ್ದರೋ ಅದರ ನಿಜಾಂಶಗಳು ನಂತರ ಅವರ ಬಳಿಗೆ ಬರಲಿವೆ.

أَلَمْ يَرَوْا۟ كَمْ أَهْلَكْنَا مِن قَبْلِهِم مِّن قَرْنٍ

6. ಅವರಿಗಿಂತ ಮೊದಲು ನಾವು ಎಷ್ಟು ತಲೆಮಾರುಗಳನ್ನು ನಾಶ ಮಾಡಿದ್ದೇವೆಂದು ಅವರು ನೋಡಿಲ್ಲವೇ? ನಿಮಗೆ ನೀಡದಂತಹ

مَّكَّنَّٰهُمْ فِى ٱلْأَرْضِ مَا لَمْ نُمَكِّن لَّكُمْ وَأَرْسَلْنَا ٱلسَّمَآءَ عَلَيْهِم مِّدْرَارًا وَجَعَلْنَا ٱلْأَنْهَٰرَ تَجْرِى مِن تَحْتِهِمْ فَأَهْلَكْنَٰهُم بِذُنُوبِهِمْ وَأَنشَأْنَا مِنۢ بَعْدِهِمْ قَرْنًا ءَاخَرِينَ ٦

ಶಕ್ತಿ-ಸಾಮರ್ಥ್ಯಗಳನ್ನು ನಾವು ಅವರಿಗೆ ನೀಡಿದ್ದೆವು. ಅವರಿಗೆ ಆಕಾಶದಿಂದ ಧಾರಾಕಾರ ಮಳೆಯನ್ನು ಸುರಿಸಿಕೊಟ್ಟೆವು. ಅವರ ತಳಭಾಗದಿಂದ ನದಿಗಳು ಹರಿಯುವಂತೆ ಮಾಡಿದೆವು. ನಂತರ ಅವರು ಮಾಡಿದ ಪಾಪಗಳ ಕಾರಣದಿಂದ ನಾವು ಅವರನ್ನು ನಾಶ ಮಾಡಿದೆವು. ಅವರ ನಂತರ ನಾವು ಬೇರೊಂದು ತಲೆಮಾರನ್ನು ಸೃಷ್ಟಿಸಿದೆವು.

7. ನಾವು ನಿಮಗೆ ಕಾಗದದಲ್ಲಿ ಬರೆದಿರುವ ಒಂದು ಗ್ರಂಥವನ್ನು ಅವತೀರ್ಣಗೊಳಿಸಿ, ನಂತರ ಅವರು ಅದನ್ನು ತಮ್ಮ ಕೈಗಳಿಂದ ಸ್ಪರ್ಶಿಸಿ ನೋಡಿದರೂ, "ಇದು ಸ್ಪಷ್ಟ ಮಾಟಗಾರಿಕೆಯಲ್ಲದೆ ಇನ್ನೇನೂ ಅಲ್ಲ" ಎಂದು ಆ ಸತ್ಯನಿಷೇಧಿಗಳು ಹೇಳುತ್ತಿದ್ದರು.

وَلَوْ نَزَّلْنَا عَلَيْكَ كِتَٰبًا فِى قِرْطَاسٍ فَلَمَسُوهُ بِأَيْدِيهِمْ لَقَالَ ٱلَّذِينَ كَفَرُوٓا۟ إِنْ هَٰذَآ إِلَّا سِحْرٌ مُّبِينٌ ٧

8. ಅವರು ಹೇಳಿದರು: "ಅವರ (ಪ್ರವಾದಿಯ) ಜೊತೆಯಲ್ಲಿ ಒಬ್ಬ ದೇವದೂತರನ್ನು ಏಕೆ ಇಳಿಸಲಾಗಿಲ್ಲ?" ಆದರೆ ನಾವು ದೇವದೂತರನ್ನು ಇಳಿಸುತ್ತಿದ್ದರೆ ವಿಷಯವು (ಅಂತಿಮವಾಗಿ) ತೀರ್ಮಾನವಾಗುತ್ತಿತ್ತು. ನಂತರ ಅವರಿಗೆ ಕಾಲಾವಕಾಶ ನೀಡಲಾಗುತ್ತಿರಲಿಲ್ಲ.

وَقَالُوا۟ لَوْلَآ أُنزِلَ عَلَيْهِ مَلَكٌ ۖ وَلَوْ أَنزَلْنَا مَلَكًا لَّقُضِىَ ٱلْأَمْرُ ثُمَّ لَا يُنظَرُونَ ٨

9. ನಾವು ದೇವದೂತರನ್ನು ಪ್ರವಾದಿಯಾಗಿ ಕಳುಹಿಸುತ್ತಿದ್ದರೂ ಸಹ ಅವರನ್ನು ಮನುಷ್ಯನಾಗಿ ಮಾಡಿಯೇ ಕಳುಹಿಸುತ್ತಿದ್ದೆವು. ಅವರು ಈಗ ಏನು ಗೊಂದಲ ಮಾಡುತ್ತಿದ್ದಾರೋ ಅದೇ ಗೊಂದಲವನ್ನು ಅವರು ಆಗಲೂ ಮಾಡುತ್ತಿದ್ದರು.[1]

وَلَوْ جَعَلْنَٰهُ مَلَكًا لَّجَعَلْنَٰهُ رَجُلًا وَلَلَبَسْنَا عَلَيْهِم مَّا يَلْبِسُونَ ٩

10. ನಿಮಗಿಂತ ಮೊದಲು ಅನೇಕ ಸಂದೇಶವಾಹಕರು ಜನರಿಂದ ತಮಾಷೆಗೆ ಗುರಿಯಾಗಿದ್ದಾರೆ. ನಂತರ, ಅವರು ಏನು ತಮಾಷೆ ಮಾಡುತ್ತಿದ್ದರೋ ಅದೇ ಅವರನ್ನು ಆವರಿಸಿಕೊಂಡಿತು.

وَلَقَدِ ٱسْتُهْزِئَ بِرُسُلٍ مِّن قَبْلِكَ فَحَاقَ بِٱلَّذِينَ سَخِرُوا۟ مِنْهُم مَّا كَانُوا۟ بِهِۦ يَسْتَهْزِءُونَ ١٠

11. ಹೇಳಿರಿ: "ನೀವು ಭೂಮಿಯಲ್ಲಿ ಸಂಚರಿಸಿರಿ. ನಂತರ ಸತ್ಯನಿಷೇಧಿಗಳ ಅಂತ್ಯವು ಹೇಗಿತ್ತೆಂದು ನೋಡಿ."

قُلْ سِيرُوا۟ فِى ٱلْأَرْضِ ثُمَّ ٱنظُرُوا۟ كَيْفَ كَانَ عَٰقِبَةُ ٱلْمُكَذِّبِينَ ١١

12. ಕೇಳಿರಿ: "ಭೂಮ್ಯಾಕಾಶಗಳಲ್ಲಿರುವುದು ಯಾರಿಗೆ ಸೇರಿದ್ದು?" ಹೇಳಿರಿ: "ಅಲ್ಲಾಹನಿಗೆ ಸೇರಿದ್ದು." ಅವನು ದಯೆ ತೋರುವುದನ್ನು ಸ್ವಯಂ ಕಡ್ಡಾಯಗೊಳಿಸಿದ್ದಾನೆ. ಪುನರುತ್ಥಾನದ

قُل لِّمَن مَّا فِى ٱلسَّمَٰوَٰتِ وَٱلْأَرْضِ ۖ قُل لِّلَّهِ ۚ كَتَبَ عَلَىٰ نَفْسِهِ ٱلرَّحْمَةَ ۚ لَيَجْمَعَنَّكُمْ إِلَىٰ يَوْمِ

[1] ಅಲ್ಲಾಹು ದೇವದೂತರನ್ನು ಪ್ರವಾದಿಯಾಗಿ ಕಳುಹಿಸುವುದು ಸಾಧ್ಯವಿಲ್ಲ. ಏಕೆಂದರೆ ದೇವದೂತರನ್ನು ಕಳುಹಿಸಿದರೆ ಜನರು ಹೇಳುತ್ತಿದ್ದರು: "ನೀನೇಕೆ ದೇವದೂತರನ್ನು ಪ್ರವಾದಿಯಾಗಿ ಕಳುಹಿಸಿದೆ? ನೀನು ಮನುಷ್ಯನನ್ನು ಪ್ರವಾದಿಯಾಗಿ ಕಳುಹಿಸುತ್ತಿದ್ದರೆ ನಾವು ಆ ಪ್ರವಾದಿಯನ್ನು ಅನುಸರಿಸುತ್ತಿದ್ದೆವು. ನಾವು ದೇವದೂತರನ್ನು ಅನುಸರಿಸುವುದು ಹೇಗೆ ಸಾಧ್ಯ? ಅವರಿಗೂ ನಮಗೂ ಅಗಾಧ ವ್ಯತ್ಯಾಸವಿದೆ." ಇನ್ನು ದೇವದೂತರನ್ನು ಪ್ರವಾದಿಯಾಗಿ ಕಳುಹಿಸುವುದಾದರೂ ಅವರನ್ನು ಮನುಷ್ಯ ರೂಪದಲ್ಲೇ ಕಳುಹಿಸಬೇಕಾಗುತ್ತದೆ. ಆದರೆ ಆಗಲೂ ಅವರು ಈಗ ಹೇಳುತ್ತಿರುವ ಅದೇ ಕಾರಣವನ್ನು ಹೇಳಿ ಅನುಸರಿಸಲು ನಿರಾಕರಿಸುತ್ತಿದ್ದರು.

| | |
|---|---|
| ದಿನದಂದು ಅವನು ನಿಮ್ಮನ್ನು ಖಂಡಿತ ಒಟ್ಟುಗೂಡಿಸುವನು. ಅದರಲ್ಲಿ ಸಂಶಯವೇ ಇಲ್ಲ. ಸ್ವಯಂ ನಷ್ಟಹೊಂದಿದವರು ಯಾರೋ ಅವರು ವಿಶ್ವಾಸವಿಡುವುದಿಲ್ಲ. | ٱلۡقِيَٰمَةِ لَا رَيۡبَ فِيهِۚ ٱلَّذِينَ خَسِرُوٓاْ أَنفُسَهُمۡ فَهُمۡ لَا يُؤۡمِنُونَ ١٢ |
| 13. ರಾತ್ರಿ ಮತ್ತು ಹಗಲಿನಲ್ಲಿರುವುದೆಲ್ಲವೂ ಅವನಿಗೆ ಸೇರಿದ್ದು. ಅವನು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ. | ۞وَلَهُۥ مَا سَكَنَ فِي ٱلَّيۡلِ وَٱلنَّهَارِۚ وَهُوَ ٱلسَّمِيعُ ٱلۡعَلِيمُ ١٣ |
| 14. ಹೇಳಿರಿ: “ಭೂಮ್ಯಾಕಾಶಗಳ ಸೃಷ್ಟಿಕರ್ತನಾದ ಅಲ್ಲಾಹನನ್ನು ಬಿಟ್ಟು ಬೇರೆಯವರನ್ನು ನಾನು ರಕ್ಷಕನಾಗಿ ಸ್ವೀಕರಿಸಬೇಕೇ? ಅವನು ಆಹಾರ ನೀಡುತ್ತಾನೆ. ಅವನಿಗೆ ಯಾರೂ ಆಹಾರವನ್ನು ನೀಡುವುದಿಲ್ಲ.” ಹೇಳಿರಿ: “ನಿಶ್ಚಯವಾಗಿಯೂ ಅಲ್ಲಾಹನಿಗೆ ಶರಣಾದವರಲ್ಲಿ ಮೊದಲಿಗನಾಗಬೇಕೆಂದು ನನಗೆ ಆಜ್ಞಾಪಿಸಲಾಗಿದೆ. ನೀವು ಎಂದಿಗೂ ಬಹುದೇವಾರಾಧಕರಲ್ಲಿ ಸೇರಬಾರದು (ಎಂದು ಕೂಡ ನನಗೆ ಆಜ್ಞಾಪಿಸಲಾಗಿದೆ).” | قُلۡ أَغَيۡرَ ٱللَّهِ أَتَّخِذُ وَلِيّٗا فَاطِرِ ٱلسَّمَٰوَٰتِ وَٱلۡأَرۡضِ وَهُوَ يُطۡعِمُ وَلَا يُطۡعَمُۗ قُلۡ إِنِّيٓ أُمِرۡتُ أَنۡ أَكُونَ أَوَّلَ مَنۡ أَسۡلَمَۖ وَلَا تَكُونَنَّ مِنَ ٱلۡمُشۡرِكِينَ ١٤ |
| 15. ಹೇಳಿರಿ: “ನಾನು ನನ್ನ ಪರಿಪಾಲಕನಿಗೆ (ಅಲ್ಲಾಹನಿಗೆ) ಅವಿಧೇಯತೆ ತೋರಿದರೆ, ಒಂದು ಭಯಾನಕ ದಿನದ (ಪುನರುತ್ಥಾನ ದಿನದ) ಶಿಕ್ಷೆ (ನನ್ನ ಮೇಲೆರಗಬಹುದೆಂದು) ನಾನು ಭಯಪಡುತ್ತೇನೆ.” | قُلۡ إِنِّيٓ أَخَافُ إِنۡ عَصَيۡتُ رَبِّي عَذَابَ يَوۡمٍ عَظِيمٖ ١٥ |
| 16. ಆ ದಿನ ಯಾರು ಶಿಕ್ಷೆಯಿಂದ ಪಾರಾಗುತ್ತಾನೋ ಅವನಿಗೆ ಅಲ್ಲಾಹು ಖಂಡಿತ ದಯೆ ತೋರಿದ್ದಾನೆ. ಅದು ಸ್ಪಷ್ಟ ವಿಜಯವಾಗಿದೆ. | مَّن يُصۡرَفۡ عَنۡهُ يَوۡمَئِذٖ فَقَدۡ رَحِمَهُۥۚ وَذَٰلِكَ ٱلۡفَوۡزُ ٱلۡمُبِينُ ١٦ |
| 17. ಅಲ್ಲಾಹು ನಿಮಗೇನಾದರೂ ತೊಂದರೆ ಕೊಟ್ಟರೆ, ಅದನ್ನು ನಿವಾರಿಸಲು ಅವನ ಹೊರತು ಯಾರಿಗೂ ಸಾಧ್ಯವಿಲ್ಲ. ಅವನು ನಿಮಗೇನಾದರೂ ಒಳಿತು ಮಾಡಿದರೆ, ಅವನು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ. | وَإِن يَمۡسَسۡكَ ٱللَّهُ بِضُرّٖ فَلَا كَاشِفَ لَهُۥٓ إِلَّا هُوَۖ وَإِن يَمۡسَسۡكَ بِخَيۡرٖ فَهُوَ عَلَىٰ كُلِّ شَيۡءٖ قَدِيرٞ ١٧ |
| 18. ಅವನಿಗೆ ಅವರ ದಾಸರ ಮೇಲೆ ಪರಮಾಧಿಕಾರವಿದೆ. ಅವನು ವಿವೇಕಪೂರ್ಣನು ಮತ್ತು ಸೂಕ್ಷ್ಮಜ್ಞಾನಿಯಾಗಿದ್ದಾನೆ. | وَهُوَ ٱلۡقَاهِرُ فَوۡقَ عِبَادِهِۦۚ وَهُوَ ٱلۡحَكِيمُ ٱلۡخَبِيرُ ١٨ |
| 19. ಕೇಳಿರಿ: “ಅತಿದೊಡ್ಡ ಸಾಕ್ಷ್ಯ ಯಾವುದು?” ಹೇಳಿರಿ: “ಅಲ್ಲಾಹು ನನ್ನ ಮತ್ತು ನಿಮ್ಮ ನಡುವೆ ಸಾಕ್ಷಿಯಾಗಿದ್ದಾನೆ. ಈ ಕುರ್‌ಆನಿನ ಮೂಲಕ ನಿಮಗೆ ಮತ್ತು ಇದು ತಲುಪುವ ಎಲ್ಲರಿಗೂ ಮುನ್ನೆಚ್ಚರಿಕೆ ನೀಡಲು ನನಗೆ ಈ ಕುರ್‌ಆನನ್ನು ದೇವವಾಣಿಯಾಗಿ ನೀಡಲಾಗಿದೆ. ಅಲ್ಲಾಹನೊಂದಿಗೆ ಬೇರೆ ದೇವರಿದ್ದಾರೆಂದು ನೀವು | قُلۡ أَيُّ شَيۡءٍ أَكۡبَرُ شَهَٰدَةٗۖ قُلِ ٱللَّهُۖ شَهِيدُۢ بَيۡنِي وَبَيۡنَكُمۡۚ وَأُوحِيَ إِلَيَّ هَٰذَا ٱلۡقُرۡءَانُ لِأُنذِرَكُم بِهِۦ وَمَنۢ بَلَغَۚ أَئِنَّكُمۡ لَتَشۡهَدُونَ أَنَّ |

ನಿಜವಾಗಿಯೂ ಸಾಕ್ಷಿವಹಿಸುತ್ತೀರಾ?" ಹೇಳಿರಿ: "ನಾನು ಸಾಕ್ಷಿ-ವಹಿಸುವುದಿಲ್ಲ." ಹೇಳಿರಿ: "ಅವನು ಏಕೈಕ ದೇವನು. ನೀವು ಮಾಡುವ ಸಹಭಾಗಿತ್ವದಿಂದ (ಶಿರ್ಕ್‌ನಿಂದ) ನಾನು ಸಂಪೂರ್ಣ ಮುಕ್ತನಾಗಿದ್ದೇನೆ."

مَعَ ٱللَّهِ ءَالِهَةً أُخۡرَىٰۚ قُل لَّآ أَشۡهَدُۚ قُلۡ إِنَّمَا هُوَ
إِلَٰهٞ وَٰحِدٞ وَإِنَّنِي بَرِيٓءٞ مِّمَّا تُشۡرِكُونَ ١٩

---

20. ನಾವು ಯಾರಿಗೆ ಗ್ರಂಥವನ್ನು ನೀಡಿದ್ದೇವೋ ಅವರು (ಯಹೂದಿಗಳು ಮತ್ತು ಕ್ರೈಸ್ತರು) ತಮ್ಮ ಮಕ್ಕಳನ್ನು ಗುರುತಿಸುವಂತೆಯೇ ಅದನ್ನು (ಕುರ್‌ಆನನ್ನು) ಗುರುತಿಸುತ್ತಾರೆ. ಸ್ವಯಂ ನಷ್ಟಹೊಂದಿದವರು ಯಾರೋ ಅವರು ವಿಶ್ವಾಸವಿಡುವುದಿಲ್ಲ.

ٱلَّذِينَ ءَاتَيۡنَٰهُمُ ٱلۡكِتَٰبَ يَعۡرِفُونَهُۥ كَمَا
يَعۡرِفُونَ أَبۡنَآءَهُمُۘ ٱلَّذِينَ خَسِرُوٓاْ أَنفُسَهُمۡ فَهُمۡ
لَا يُؤۡمِنُونَ ٢٠

---

21. ಅಲ್ಲಾಹನ ಮೇಲೆ ಸುಳ್ಳು ಆರೋಪಿಸುವವನಿಗಿಂತ ಅಥವಾ ಅಲ್ಲಾಹನ ವಚನಗಳನ್ನು ನಿಷೇಧಿಸುವವನಿಗಿಂತ ದೊಡ್ಡ ಅಕ್ರಮಿ ಯಾರು? ನಿಶ್ಚಯವಾಗಿಯೂ ಅಕ್ರಮಿಗಳು ಯಶಸ್ವಿಯಾಗುವುದಿಲ್ಲ.

وَمَنۡ أَظۡلَمُ مِمَّنِ ٱفۡتَرَىٰ عَلَى ٱللَّهِ كَذِبًا أَوۡ
كَذَّبَ بِـَٔايَٰتِهِۦٓۚ إِنَّهُۥ لَا يُفۡلِحُ ٱلظَّٰلِمُونَ ٢١

---

22. ನಾವು ಅವರೆಲ್ಲರನ್ನೂ ಒಟ್ಟುಗೂಡಿಸುವ ದಿನ. ನಂತರ ನಾವು ಸಹಭಾಗಿತ್ವ (ಶಿರ್ಕ್) ಮಾಡಿದವರೊಡನೆ ಕೇಳುವೆವು: "ನೀವು (ನಿಮ್ಮ ದೇವರುಗಳೆಂದು) ವಾದಿಸುತ್ತಿದ್ದ ಆ ಸಹಭಾಗಿಗಳು ಎಲ್ಲಿದ್ದಾರೆ?"

وَيَوۡمَ نَحۡشُرُهُمۡ جَمِيعٗا ثُمَّ نَقُولُ لِلَّذِينَ أَشۡرَكُوٓاْ
أَيۡنَ شُرَكَآؤُكُمُ ٱلَّذِينَ كُنتُمۡ تَزۡعُمُونَ ٢٢

---

23. ನಂತರ ಅವರ ಸಹಭಾಗಿತ್ವದ (ಶಿರ್ಕ್‌ನ) ಪರಿಣಾಮವು, "ನಮ್ಮ ಪರಿಪಾಲಕನಾದ ಅಲ್ಲಾಹನ ಮೇಲಾಣೆ! ನಿಶ್ಚಯವಾಗಿಯೂ ನಾವು ಸಹಭಾಗಿತ್ವ (ಶಿರ್ಕ್) ಮಾಡಿಲ್ಲ" ಎಂದು ಹೇಳುವುದರ ಹೊರತು ಇನ್ನೇನೂ ಆಗಿರುವುದಿಲ್ಲ.

ثُمَّ لَمۡ تَكُن فِتۡنَتُهُمۡ إِلَّآ أَن قَالُواْ وَٱللَّهِ رَبِّنَا مَا
كُنَّا مُشۡرِكِينَ ٢٣

---

24. ಅವರು ಅವರ ಬಗ್ಗೆಯೇ ಹೇಗೆ ಸುಳ್ಳು ಹೇಳುತ್ತಿದ್ದಾರೆಂದು ನೋಡಿ. ಅವರು (ಅಲ್ಲಾಹನ ಸಹಭಾಗಿಗಳೆಂದು) ಆರೋಪಿಸುತ್ತಿದ್ದ ದೇವರುಗಳೆಲ್ಲವೂ ಅವರನ್ನು ಬಿಟ್ಟು ಮರೆಯಾಗಿ ಹೋದವು.

ٱنظُرۡ كَيۡفَ كَذَبُواْ عَلَىٰٓ أَنفُسِهِمۡۚ وَضَلَّ عَنۡهُم
مَّا كَانُواْ يَفۡتَرُونَ ٢٤

---

25. ಅವರಲ್ಲಿ ಕೆಲವರು ನೀವು (ಕುರ್‌ಆನ್ ಪಠಿಸುವುದನ್ನು) ಕಿವಿಗೊಟ್ಟು ಕೇಳುತ್ತಾರೆ. ಆದರೆ ಅವರು ಅದನ್ನು ಅರ್ಥಮಾಡಿಕೊಳ್ಳದಂತೆ ನಾವು ಅವರ ಹೃದಯಗಳ ಮೇಲೆ ಪರದೆಗಳನ್ನು ಮತ್ತು ಅವರ ಕಿವಿಗಳಿಗೆ ಕಿವುಡುತನವನ್ನು ಹಾಕಿದ್ದೇವೆ. ಅವರು ಎಲ್ಲಾ ರೀತಿಯ ದೃಷ್ಟಾಂತಗಳನ್ನು ನೋಡಿದರೂ ವಿಶ್ವಾಸವಿಡುವುದಿಲ್ಲ. ಎಲ್ಲಿಯ-ವರೆಗೆಂದರೆ ಅವರು ತಮ್ಮ ಬಳಿಗೆ ತರ್ಕಿಸುವುದಕ್ಕಾಗಿ ಬಂದರೆ, ಆ

وَمِنۡهُم مَّن يَسۡتَمِعُ إِلَيۡكَۖ وَجَعَلۡنَا عَلَىٰ قُلُوبِهِمۡ
أَكِنَّةً أَن يَفۡقَهُوهُ وَفِيٓ ءَاذَانِهِمۡ وَقۡرٗاۚ وَإِن
يَرَوۡاْ كُلَّ ءَايَةٖ لَّا يُؤۡمِنُواْ بِهَاۖ حَتَّىٰٓ إِذَا جَآءُوكَ
يُجَٰدِلُونَكَ يَقُولُ ٱلَّذِينَ كَفَرُوٓاْ إِنۡ هَٰذَآ إِلَّآ
أَسَٰطِيرُ ٱلۡأَوَّلِينَ ٢٥

ಸತ್ಯನಿಷೇಧಿಗಳು ಹೇಳುತ್ತಾರೆ: "ಇದು ಪುರಾತನ ಕಾಲದ ಕಟ್ಟುಕ-
ಥೆಗಳಲ್ಲದೆ ಇನ್ನೇನೂ ಅಲ್ಲ."

---

**26.** ಅವರು ಆ ಸತ್ಯದಿಂದ ಜನರನ್ನು ತಡೆಯುವುದಲ್ಲದೆ, ಸ್ವಯಂ ಅದರಿಂದ ದೂರವಾಗುತ್ತಿದ್ದಾರೆ. ಅವರು ಸ್ವಯಂ ಅವರನ್ನೇ ನಾಶ ಮಾಡುತ್ತಿದ್ದಾರೆ. ಆದರೆ, ಅವರು ಅದನ್ನು ಅರ್ಥಮಾಡಿಕೊಳ್ಳುವುದಿಲ್ಲ.

وَهُمْ يَنْهَوْنَ عَنْهُ وَيَنْـَٔوْنَ عَنْهُ ۖ وَإِن يُهْلِكُونَ
إِلَّآ أَنفُسَهُمْ وَمَا يَشْعُرُونَ ٢٦

---

**27.** ಅವರನ್ನು ನರಕದ ಮುಂದೆ ನಿಲ್ಲಿಸಲಾಗುವ ದೃಶ್ಯವನ್ನು ನೀವು ನೋಡಿದ್ದರೆ! ಅವರು ಹೇಳುವರು: "ನಮ್ಮನ್ನು ಪುನಃ ಭೂಲೋಕಕ್ಕೆ ಕಳುಹಿಸುತ್ತಿದ್ದರೆ ಎಷ್ಟು ಚೆನ್ನಾಗಿತ್ತು! ಹಾಗೇನಾದರೂ ಕಳುಹಿಸಿದರೆ, ನಾವು ನಮ್ಮ ಪರಿಪಾಲಕನ (ಅಲ್ಲಾಹನ) ವಚನಗಳನ್ನು ಖಂಡಿತ ನಿಷೇಧಿಸುವುದಿಲ್ಲ; ಮತ್ತು ನಾವು ಖಂಡಿತ ಸತ್ಯವಿಶ್ವಾಸಿಗಳೊಡನೆ ಸೇರುವೆವು."

وَلَوْ تَرَىٰٓ إِذْ وُقِفُوا۟ عَلَى ٱلنَّارِ فَقَالُوا۟ يَـٰلَيْتَنَا
نُرَدُّ وَلَا نُكَذِّبَ بِـَٔايَـٰتِ رَبِّنَا وَنَكُونَ مِنَ
ٱلْمُؤْمِنِينَ ٢٧

---

**28.** ಅಲ್ಲ, ವಾಸ್ತವವಾಗಿ ಅವರು ಇದಕ್ಕೆ ಮೊದಲು ಏನನ್ನು ಮುಚ್ಚಿಟ್ಟಿದ್ದರೋ ಅದು ಈಗ ಅವರಿಗೆ ಬಹಿರಂಗವಾಗಿದೆ. ಅವರನ್ನು ಪುನಃ ಭೂಲೋಕಕ್ಕೆ ಕಳುಹಿಸಲಾದರೂ, ಅವರಿಗೆ ವಿರೋಧಿಸಲಾದ ವಿಷಯಗಳನ್ನೇ ಅವರು ಪುನರಾವರ್ತಿಸುವರು. ನಿಶ್ಚಯವಾಗಿಯೂ ಅವರು ಸುಳ್ಳು ಹೇಳುವವರಾಗಿದ್ದಾರೆ.

بَلْ بَدَا لَهُم مَّا كَانُوا۟ يُخْفُونَ مِن قَبْلُ ۖ وَلَوْ رُدُّوا۟
لَعَادُوا۟ لِمَا نُهُوا۟ عَنْهُ وَإِنَّهُمْ لَكَـٰذِبُونَ ٢٨

---

**29.** ಅವರು ಹೇಳಿದರು: "ನಮ್ಮ ಈ ಭೂಲೋಕ ಜೀವನದ ಹೊರತು ಬೇರೇನೂ ಇಲ್ಲ. ನಮಗೆ ಪುನಃ ಜೀವ ನೀಡಿ ಎಬ್ಬಿಸಲಾಗುವುದೂ ಇಲ್ಲ."

وَقَالُوٓا۟ إِنْ هِىَ إِلَّا حَيَاتُنَا ٱلدُّنْيَا وَمَا نَحْنُ
بِمَبْعُوثِينَ ٢٩

---

**30.** ಅವರನ್ನು ಅವರ ಪರಿಪಾಲಕನ (ಅಲ್ಲಾಹನ) ಮುಂದೆ ನಿಲ್ಲಿಸಲಾದ ದೃಶ್ಯವನ್ನು ನೀವು ನೋಡಿದ್ದರೆ! ಅವನು ಕೇಳುವನು: "ಇದು ಸತ್ಯವಲ್ಲವೇ?" ಅವರು ಉತ್ತರಿಸುವರು: "ಹೌದು! ನಮ್ಮ ಪರಿಪಾಲಕನ (ಅಲ್ಲಾಹನ) ಮೇಲಾಣೆ." ಅವನು ಹೇಳುವನು: "ಹಾಗಾದರೆ ನೀವು ಏನನ್ನು ನಿಷೇಧಿಸಿದಿರೋ ಅದರ ಶಿಕ್ಷೆಯನ್ನು ಅನುಭವಿಸಿರಿ."

وَلَوْ تَرَىٰٓ إِذْ وُقِفُوا۟ عَلَىٰ رَبِّهِمْ ۚ قَالَ أَلَيْسَ هَـٰذَا
بِٱلْحَقِّ ۚ قَالُوا۟ بَلَىٰ وَرَبِّنَا ۚ قَالَ فَذُوقُوا۟ ٱلْعَذَابَ بِمَا
كُنتُمْ تَكْفُرُونَ ٣٠

---

**31.** ಅಲ್ಲಾಹನ ಭೇಟಿಯನ್ನು ನಿಷೇಧಿಸಿದವರು ನಿಶ್ಚಯವಾಗಿಯೂ ನಷ್ಟ ಹೊಂದಿದರು. ಎಲ್ಲಿಯವರೆಗೆಂದರೆ, ಹಠಾತ್ತನೆ ಅಂತಿಮದಿನವು ಬರುವಾಗ, ಅವರು ಹೇಳುವರು: "ನಾವು ಇದರ (ಅಂತಿಮದಿನ) ಬಗ್ಗೆ ನಿರ್ಲಕ್ಷ್ಯ ಮಾಡಿದ ಕಾರಣ ಅಯ್ಯೋ! ನಮ್ಮ ದುರ್ಗತಿಯೇ!" ಅವರು ಅವರ ಬೆನ್ನುಗಳ ಮೇಲೆ ಪಾಪಗಳ

قَدْ خَسِرَ ٱلَّذِينَ كَذَّبُوا۟ بِلِقَآءِ ٱللَّهِ ۖ حَتَّىٰٓ إِذَا
جَآءَتْهُمُ ٱلسَّاعَةُ بَغْتَةً قَالُوا۟ يَـٰحَسْرَتَنَا عَلَىٰ
مَا فَرَّطْنَا فِيهَا وَهُمْ يَحْمِلُونَ أَوْزَارَهُمْ عَلَىٰ
ظُهُورِهِمْ ۚ أَلَا سَآءَ مَا يَزِرُونَ ٣١

ಭಾರವನ್ನು ಹೊರುತ್ತಿರುವರು. ಅವರು ಹೊರುವ ಭಾರವು ಬಹಳ ನಿಕೃಷ್ಟವಾಗಿದೆ.

---

32. ಇಹಲೋಕ ಜೀವನವು ಆಟ ಮತ್ತು ಮನೋರಂಜನೆಯಲ್ಲದೆ ಇನ್ನೇನೂ ಅಲ್ಲ. ದೇವಭಯವುಳ್ಳವರಿಗೆ ಪರಲೋಕ ಜೀವನವೇ ಉತ್ತಮವಾಗಿದೆ. ನೀವು ಆಲೋಚಿಸುವುದಿಲ್ಲವೇ?

وَمَا ٱلۡحَيَوٰةُ ٱلدُّنۡيَآ إِلَّا لَعِبٞ وَلَهۡوٞۖ وَلَلدَّارُ ٱلۡأٓخِرَةُ خَيۡرٞ لِّلَّذِينَ يَتَّقُونَۚ أَفَلَا تَعۡقِلُونَ ٣٢

---

33. ಅವರು ಹೇಳುವ ಮಾತುಗಳಿಂದ ನಿಮಗೆ ಬೇಸರವಾಗುತ್ತಿದೆ-ಯೆಂದು ನಮಗೆ ಖಂಡಿತ ತಿಳಿದಿದೆ. ಆದರೆ ಅವರು ನಿಮ್ಮನ್ನು ನಿಷೇಧಿಸುವುದಿಲ್ಲ. ಆದರೆ ಆ ಅತಿರೇಕಿಗಳು ಅಲ್ಲಾಹನ ವಚನಗಳನ್ನು ನಿಷೇಧಿಸುತ್ತಾರೆ.

قَدۡ نَعۡلَمُ إِنَّهُۥ لَيَحۡزُنُكَ ٱلَّذِي يَقُولُونَۖ فَإِنَّهُمۡ لَا يُكَذِّبُونَكَ وَلَٰكِنَّ ٱلظَّٰلِمِينَ بِـَٔايَٰتِ ٱللَّهِ يَجۡحَدُونَ ٣٣

---

34. ನಿಮಗಿಂತ ಮೊದಲೂ ಸಂದೇಶವಾಹಕರು ನಿಷೇಧಿಸಲ್ಪಟ್ಟಿದ್ದಾರೆ. ಜನರು ತಮ್ಮನ್ನು ನಿಷೇಧಿಸುವುದನ್ನು ಮತ್ತು ತಮಗೆ ತೊಂದರೆ ನೀಡುವುದನ್ನು ಅವರು ತಾಳಿಕೊಳ್ಳುತ್ತಿದ್ದರು—ನಮ್ಮ ಸಹಾಯವು ಬರುವವರೆಗೆ. ಅಲ್ಲಾಹನ ವಚನಗಳನ್ನು ಬದಲಾಯಿಸಲು ಯಾರಿಗೂ ಸಾಧ್ಯವಿಲ್ಲ. ಸಂದೇಶವಾಹಕರುಗಳ ಕೆಲವು ಸಮಾಚಾರಗಳು ನಿಮಗೆ ಈಗಾಗಲೇ ತಲುಪಿವೆ.

وَلَقَدۡ كُذِّبَتۡ رُسُلٞ مِّن قَبۡلِكَ فَصَبَرُواْ عَلَىٰ مَا كُذِّبُواْ وَأُوذُواْ حَتَّىٰٓ أَتَىٰهُمۡ نَصۡرُنَاۚ وَلَا مُبَدِّلَ لِكَلِمَٰتِ ٱللَّهِۚ وَلَقَدۡ جَآءَكَ مِن نَّبَإِيْ ٱلۡمُرۡسَلِينَ ٣٤

---

35. ಅವರು ನಿಮ್ಮನ್ನು ತಿರಸ್ಕರಿಸಿ ವಿಮುಖರಾಗುವು-ದನ್ನು ಸಹಿಸಿಕೊಳ್ಳಲು ನಿಮಗೆ ಕಷ್ಟವಾಗುವುದಾದರೆ, ಭೂಮಿಯೊಳಗಿಳಿಯಲು ಒಂದು ಸುರಂಗವನ್ನು, ಅಥವಾ ಆಕಾಶಕ್ಕೇರಲು ಒಂದು ಏಣಿಯನ್ನು ಹುಡುಕಿ, ನಂತರ ಅವರಿಗೊಂದು ದೃಷ್ಟಾಂತವನ್ನು ತಂದುಕೊಡಲು ಸಾಧ್ಯವಾಗು-ವುದಾದರೆ ತಂದು ಕೊಡಿ. ಅಲ್ಲಾಹು ಇಚ್ಛಿಸಿದರೆ ಅವರೆಲ್ಲರನ್ನೂ ಸನ್ಮಾರ್ಗದಲ್ಲಿ ಒಟ್ಟುಗೂಡಿಸುತ್ತಿದ್ದನು. ಆದ್ದರಿಂದ ನೀವು ಅವಿವೇಕಿಗಳಲ್ಲಿ ಸೇರಬೇಡಿ.

وَإِن كَانَ كَبُرَ عَلَيۡكَ إِعۡرَاضُهُمۡ فَإِنِ ٱسۡتَطَعۡتَ أَن تَبۡتَغِيَ نَفَقٗا فِي ٱلۡأَرۡضِ أَوۡ سُلَّمٗا فِي ٱلسَّمَآءِ فَتَأۡتِيَهُم بِـَٔايَةٖۚ وَلَوۡ شَآءَ ٱللَّهُ لَجَمَعَهُمۡ عَلَى ٱلۡهُدَىٰۚ فَلَا تَكُونَنَّ مِنَ ٱلۡجَٰهِلِينَ ٣٥

---

36. ಕೇಳುವವರು ಮಾತ್ರ ಉತ್ತರಿಸುತ್ತಾರೆ. ಸತ್ತವರನ್ನು ಅಲ್ಲಾಹು ಜೀವ ನೀಡಿ ಎಬ್ಬಿಸುತ್ತಾನೆ. ನಂತರ ಅವರನ್ನು ಅವನ ಬಳಿಗೆ ಮರಳಿಸಲಾಗುತ್ತದೆ.

إِنَّمَا يَسۡتَجِيبُ ٱلَّذِينَ يَسۡمَعُونَۘ وَٱلۡمَوۡتَىٰ يَبۡعَثُهُمُ ٱللَّهُ ثُمَّ إِلَيۡهِ يُرۡجَعُونَ ٣٦

---

37. ಅವರು ಕೇಳುತ್ತಾರೆ: "ಅವರಿಗೆ (ಪ್ರವಾದಿಗೆ) ಅವರ ಪರಿಪಾಲಕನಿಂದ (ಅಲ್ಲಾಹನಿಂದ) ಒಂದು ದೃಷ್ಟಾಂತವೇಕೆ ಅವತೀರ್ಣವಾಗಿಲ್ಲ?" ಹೇಳಿರಿ: "ನಿಶ್ಚಯವಾಗಿಯೂ ದೃಷ್ಟಾಂತವನ್ನು ಅವತೀರ್ಣಗೊಳಿಸುವ ಸಾಮರ್ಥ್ಯ ಅಲ್ಲಾಹನಿಗಿದೆ." ಆದರೆ ಅವರಲ್ಲಿ ಹೆಚ್ಚಿನವರು ತಿಳಿಯುವುದಿಲ್ಲ.

وَقَالُواْ لَوۡلَا نُزِّلَ عَلَيۡهِ ءَايَةٞ مِّن رَّبِّهِۦۚ قُلۡ إِنَّ ٱللَّهَ قَادِرٌ عَلَىٰٓ أَن يُنَزِّلَ ءَايَةٗ وَلَٰكِنَّ أَكۡثَرَهُمۡ لَا يَعۡلَمُونَ ٣٧

38. ಭೂಮಿಯಲ್ಲಿರುವ ಯಾವುದೇ ಜೀವಿಯಾಗಲಿ ಅಥವಾ (ಆಕಾಶದಲ್ಲಿ) ಎರಡು ರೆಕ್ಕೆಗಳಿಂದ ಹಾರಾಡುವ ಹಕ್ಕಿಗಳಾಗಲಿ, ಅವೆಲ್ಲವೂ ನಿಮ್ಮಂತಿರುವ ಸಮುದಾಯಗಳಾಗಿವೆ. ನಾವು ಗ್ರಂಥದಲ್ಲಿ[1] ಏನನ್ನೂ ದಾಖಲಿಸದೆ ಬಿಟ್ಟಿಲ್ಲ. ನಂತರ ಅವರನ್ನು ಅವರ ಪರಿಪಾಲಕನ (ಅಲ್ಲಾಹನ) ಬಳಿಗೆ ಒಟ್ಟುಗೂಡಿಸಲಾಗುತ್ತದೆ.

وَمَا مِن دَآبَّةٖ فِي ٱلۡأَرۡضِ وَلَا طَٰٓئِرٖ يَطِيرُ بِجَنَاحَيۡهِ إِلَّآ أُمَمٌ أَمۡثَالُكُمۚ مَّا فَرَّطۡنَا فِي ٱلۡكِتَٰبِ مِن شَيۡءٖۚ ثُمَّ إِلَىٰ رَبِّهِمۡ يُحۡشَرُونَ ٣٨

39. ನಮ್ಮ ವಚನಗಳನ್ನು ನಿಷೇಧಿಸಿದವರು ಯಾರೋ—ಅವರು ಕಿವುಡರು, ಮೂಕರು ಮತ್ತು ಕತ್ತಲೆಗಳಲ್ಲಿರುವವರಾಗಿದ್ದಾರೆ. ಅಲ್ಲಾಹು ಅವನು ಇಚ್ಛಿಸುವವರನ್ನು ದುರ್ಮಾರ್ಗದಲ್ಲಿ ಮಾಡುತ್ತಾನೆ ಮತ್ತು ಅವನು ಇಚ್ಛಿಸುವವರನ್ನು ನೇರಮಾರ್ಗದಲ್ಲಿ ಮಾಡುತ್ತಾನೆ.

وَٱلَّذِينَ كَذَّبُواْ بِـَٔايَٰتِنَا صُمّٞ وَبُكۡمٞ فِي ٱلظُّلُمَٰتِۗ مَن يَشَإِ ٱللَّهُ يُضۡلِلۡهُ وَمَن يَشَأۡ يَجۡعَلۡهُ عَلَىٰ صِرَٰطٖ مُّسۡتَقِيمٖ ٣٩

40. ಹೇಳಿರಿ: "ನೀವು ಆಲೋಚಿಸಿ ನೋಡಿದ್ದೀರಾ! ಅಲ್ಲಾಹನ ಶಿಕ್ಷೆಯು ನಿಮ್ಮ ಮೇಲೆರಗಿದರೆ ಅಥವಾ ಅಂತಿಮದಿನವು ಸಂಭವಿಸಿದರೆ, ನೀವು ಅಲ್ಲಾಹನನ್ನು ಬಿಟ್ಟು ಬೇರೆ ದೇವರುಗಳನ್ನು ಕರೆದು ಪ್ರಾರ್ಥಿಸುತ್ತೀರಾ? ನೀವು ಸತ್ಯವಂತರಾಗಿದ್ದರೆ ಹೇಳಿರಿ."

قُلۡ أَرَءَيۡتَكُمۡ إِنۡ أَتَىٰكُمۡ عَذَابُ ٱللَّهِ أَوۡ أَتَتۡكُمُ ٱلسَّاعَةُ أَغَيۡرَ ٱللَّهِ تَدۡعُونَ إِن كُنتُمۡ صَٰدِقِينَ ٤٠

41. ಇಲ್ಲ, ವಾಸ್ತವವಾಗಿ ನೀವು ಅಲ್ಲಾಹನನ್ನೇ ಕರೆದು ಪ್ರಾರ್ಥಿಸುತ್ತೀರಿ. ಆಗ ಅವನು ಇಚ್ಛಿಸಿದರೆ, ಯಾವುದಕ್ಕಾಗಿ ನೀವು ಅವನನ್ನು ಕರೆದು ಪ್ರಾರ್ಥಿಸಿದಿರೋ ಅದನ್ನು ಅವನು ನಿವಾರಿಸುವನು. (ಆ ಸಂದರ್ಭದಲ್ಲಿ) ನೀವು ಮಾಡುತ್ತಿದ್ದ ಸಹಭಾಗಿತ್ವವನ್ನು (ಶಿರ್ಕ್) ನೀವು ಮರೆತುಬಿಡುತ್ತೀರಿ.

بَلۡ إِيَّاهُ تَدۡعُونَ فَيَكۡشِفُ مَا تَدۡعُونَ إِلَيۡهِ إِن شَآءَ وَتَنسَوۡنَ مَا تُشۡرِكُونَ ٤١

42. ನಿಮಗಿಂತ ಮೊದಲು ಅನೇಕ ಸಮುದಾಯಗಳಿಗೆ ನಾವು ಸಂದೇಶವಾಹಕರನ್ನು ಕಳುಹಿಸಿದ್ದೇವೆ. ನಂತರ ಅವರು ವಿನಮ್ರರಾಗುವುದಕ್ಕಾಗಿ ನಾವು ಅವರನ್ನು (ಬಡತನ ಮುಂತಾದ) ಕಷ್ಟಗಳಿಂದ ಮತ್ತು (ಅನಾರೋಗ್ಯ ಮುಂತಾದ) ತೊಂದರೆಗಳಿಂದ ಹಿಡಿದೆವು.

وَلَقَدۡ أَرۡسَلۡنَآ إِلَىٰٓ أُمَمٖ مِّن قَبۡلِكَ فَأَخَذۡنَٰهُم بِٱلۡبَأۡسَآءِ وَٱلضَّرَّآءِ لَعَلَّهُمۡ يَتَضَرَّعُونَ ٤٢

43. ನಮ್ಮ ಶಿಕ್ಷೆಯು ಬಂದಾಗ ಅವರೇಕೆ ವಿನಮ್ರರಾಗಲಿಲ್ಲ? ಆದರೆ ಅವರ ಹೃದಯಗಳು ಕಠೋರವಾದವು. ಅವರು ಮಾಡುತ್ತಿದ್ದ ದುಷ್ಕರ್ಮಗಳನ್ನು ಶೈತಾನನು ಅವರಿಗೆ ಅಲಂಕರಿಸಿ ತೋರಿಸಿದನು.

فَلَوۡلَآ إِذۡ جَآءَهُم بَأۡسُنَا تَضَرَّعُواْ وَلَٰكِن قَسَتۡ قُلُوبُهُمۡ وَزَيَّنَ لَهُمُ ٱلشَّيۡطَٰنُ مَا كَانُواْ يَعۡمَلُونَ ٤٣

44. ಅವರಿಗೆ ನೀಡಲಾದ ಹಿತೋಪದೇಶಗಳನ್ನು ಅವರು ಮರೆತಾಗ,

فَلَمَّا نَسُواْ مَا ذُكِّرُواْ بِهِۦ فَتَحۡنَا عَلَيۡهِمۡ أَبۡوَٰبَ

[1] ಗ್ರಂಥದಲ್ಲಿ ಎಂದರೆ ಅಲ್ಲಾಹನ ಬಳಿಯಿರುವ ಲೌಹುಲ್ ಮಹ್ಫೂಝ್ (ಸುರಕ್ಷಿತ ಫಲಕ) ನಲ್ಲಿ. ಅದರಲ್ಲಿ ಎಲ್ಲಾ ಜೀವಿಗಳ ಸಂಪೂರ್ಣ ಮಾಹಿತಿಗಳನ್ನು ದಾಖಲಿಸಲಾಗಿದೆ.

ಎಲ್ಲಾ ವಸ್ತುಗಳ ದ್ವಾರಗಳನ್ನು ನಾವು ಅವರಿಗೆ ತೆರೆದುಕೊಟ್ಟೆವು.[1] ಎಲ್ಲಿಯವರೆಗೆಂದರೆ, ಅವರಿಗೆ ನೀಡಲಾದ ಸವಲತ್ತುಗಳನ್ನು ಕಂಡು ಅವರು ಆನಂದಿಸುತ್ತಿದ್ದಾಗ ಹಠಾತ್ತನೆ ನಾವು ಅವರನ್ನು ಹಿಡಿದೆವು. ಆಗ ಅವರು ಸಂಪೂರ್ಣ ಹತಾಶರಾದರು.

كُلِّ شَيۡءٍ حَتَّىٰٓ إِذَا فَرِحُواْ بِمَآ أُوتُوٓاْ أَخَذۡنَٰهُم بَغۡتَةٗ فَإِذَا هُم مُّبۡلِسُونَ ﴿٤٤﴾

45. ಅಕ್ರಮವೆಸಗಿದ ಜನರನ್ನು ಬೇರು ಸಹಿತ ನಿರ್ಮೂಲನ ಮಾಡಲಾಯಿತು. ಸರ್ವಲೋಕಗಳ ಪರಿಪಾಲಕನಾದ ಅಲ್ಲಾಹನಿಗೆ ಸರ್ವಸ್ತುತಿ.

فَقُطِعَ دَابِرُ ٱلۡقَوۡمِ ٱلَّذِينَ ظَلَمُواْۚ وَٱلۡحَمۡدُ لِلَّهِ رَبِّ ٱلۡعَٰلَمِينَ ﴿٤٥﴾

46. ಹೇಳಿರಿ: “ನೀವು ಆಲೋಚಿಸಿ ನೋಡಿದ್ದೀರಾ! ಅಲ್ಲಾಹು ನಿಮ್ಮ ಶ್ರವಣಶಕ್ತಿ ಮತ್ತು ದೃಷ್ಟಿಯನ್ನು ತೆಗೆದು, ನಿಮ್ಮ ಹೃದಯಗಳಿಗೆ ಮೊಹರು ಹಾಕಿದರೆ, ಅಲ್ಲಾಹನ ಹೊರತು ಅದನ್ನು ತಂದುಕೊಡುವ ದೇವರು ಯಾರು?” ನಾವು ಅವರಿಗೆ ನಮ್ಮ ವಚನಗಳನ್ನು ಹೇಗೆ ವಿವರಿಸಿಕೊಡುತ್ತಿದ್ದೇವೆಂದು ನೋಡಿರಿ. ಅದರ ನಂತರವೂ ಅವರು ವಿಮುಖರಾಗುತ್ತಿದ್ದಾರೆ.

قُلۡ أَرَءَيۡتُمۡ إِنۡ أَخَذَ ٱللَّهُ سَمۡعَكُمۡ وَأَبۡصَٰرَكُمۡ وَخَتَمَ عَلَىٰ قُلُوبِكُم مَّنۡ إِلَٰهٌ غَيۡرُ ٱللَّهِ يَأۡتِيكُم بِهِۗ ٱنظُرۡ كَيۡفَ نُصَرِّفُ ٱلۡأٓيَٰتِ ثُمَّ هُمۡ يَصۡدِفُونَ ﴿٤٦﴾

47. ಹೇಳಿರಿ: “ನೀವು ಆಲೋಚಿಸಿ ನೋಡಿದ್ದೀರಾ! ಅಲ್ಲಾಹನ ಶಿಕ್ಷೆಯು ಹಠಾತ್ತನೆ ಬಂದರೆ, ಅಥವಾ ಬಹಿರಂಗವಾಗಿ ಬಂದರೆ, ಅಕ್ರಮವೆಸಗಿದ ಜನರ ಹೊರತು ಬೇರೆ ಯಾರಾದರೂ ನಾಶವಾಗುವರೇ?”

قُلۡ أَرَءَيۡتَكُمۡ إِنۡ أَتَىٰكُمۡ عَذَابُ ٱللَّهِ بَغۡتَةً أَوۡ جَهۡرَةً هَلۡ يُهۡلَكُ إِلَّا ٱلۡقَوۡمُ ٱلظَّٰلِمُونَ ﴿٤٧﴾

48. ಶುಭವಾರ್ತೆ ತಿಳಿಸಲು ಮತ್ತು ಮುನ್ನೆಚ್ಚರಿಕೆ ನೀಡಲು ಮಾತ್ರ ನಾವು ಸಂದೇಶವಾಹಕರನ್ನು ಕಳುಹಿಸುತ್ತೇವೆ. ಆದ್ದರಿಂದ ಯಾರು ಸತ್ಯವಿಶ್ವಾಸವನ್ನು ಸ್ವೀಕರಿಸಿ ಸ್ವಯಂ ಸುಧಾರಿಸಿಕೊಳ್ಳುತ್ತಾನೋ—ಅವರಿಗೆ ಯಾವುದೇ ಭಯವಿಲ್ಲ; ಅವರು ದುಃಖಿಸುವುದೂ ಇಲ್ಲ.

وَمَا نُرۡسِلُ ٱلۡمُرۡسَلِينَ إِلَّا مُبَشِّرِينَ وَمُنذِرِينَۖ فَمَنۡ ءَامَنَ وَأَصۡلَحَ فَلَا خَوۡفٌ عَلَيۡهِمۡ وَلَا هُمۡ يَحۡزَنُونَ ﴿٤٨﴾

49. ಆದರೆ ನಮ್ಮ ವಚನಗಳನ್ನು ನಿಷೇಧಿಸಿದವರು ಯಾರೋ—ಅವರು ಅವಿಧೇಯತೆ ತೋರಿದ ಕಾರಣ ಶಿಕ್ಷೆಯು ಅವರನ್ನು ಸ್ಪರ್ಶಿಸಲಿದೆ.

وَٱلَّذِينَ كَذَّبُواْ بِـَٔايَٰتِنَا يَمَسُّهُمُ ٱلۡعَذَابُ بِمَا كَانُواْ يَفۡسُقُونَ ﴿٤٩﴾

50. ಹೇಳಿರಿ: “ಅಲ್ಲಾಹನ ಖಜಾನೆಗಳು ನನ್ನ ವಶದಲ್ಲಿವೆಯೆಂದು ನಾನು ಹೇಳುವುದಿಲ್ಲ. ನನಗೆ ಅದೃಶ್ಯ ವಿಷಯಗಳು ತಿಳಿದಿಲ್ಲ. ನಾನೊಬ್ಬ ದೇವದೂತನೆಂದು ನಾನು ನಿಮಗೆ ಹೇಳುವುದಿಲ್ಲ. ನನಗೆ ದೇವವಾಣಿಯಾಗಿ ನೀಡಲಾದುದನ್ನು ಮಾತ್ರ ನಾನು ಅನುಸರಿಸುತ್ತೇನೆ.” ಕೇಳಿರಿ: “ಕಣ್ಣು ಕಾಣದವನು ಮತ್ತು ಕಣ್ಣು

قُل لَّآ أَقُولُ لَكُمۡ عِندِي خَزَآئِنُ ٱللَّهِ وَلَآ أَعۡلَمُ ٱلۡغَيۡبَ وَلَآ أَقُولُ لَكُمۡ إِنِّي مَلَكٌۖ إِنۡ أَتَّبِعُ إِلَّا مَا يُوحَىٰٓ إِلَيَّۚ قُلۡ هَلۡ يَسۡتَوِي ٱلۡأَعۡمَىٰ وَٱلۡبَصِيرُۚ أَفَلَا تَتَفَكَّرُونَ ﴿٥٠﴾

[1] ಅಂದರೆ ಅವರಿಗೆ ಎಲ್ಲಾ ರೀತಿಯ ಸೌಲಭ್ಯಗಳನ್ನು ಮತ್ತು ಸವಲತ್ತುಗಳನ್ನು ಯಥೇಷ್ಟವಾಗಿ ನೀಡಿದೆವು.

ಕಾಣುವವನು ಸಮಾನರೇ? ನೀವೇಕೆ ಆಲೋಚಿಸುವುದಿಲ್ಲ?"

| | |
|---|---|
| 51. ತಮ್ಮ ಪರಿಪಾಲಕನ (ಅಲ್ಲಾಹನ) ಬಳಿಗೆ ತಮ್ಮನ್ನು ಒಟ್ಟುಗೂಡಿಸಲಾಗುವುದು ಎಂದು ಭಯಪಡುವವರಿಗೆ ಇದರ (ಕುರ್ಆನಿನ) ಮೂಲಕ ಎಚ್ಚರಿಕೆ ನೀಡಿರಿ. ಅವರಿಗೆ ಅಲ್ಲಾಹನ ಹೊರತು ಬೇರೆ ರಕ್ಷಕರು ಅಥವಾ ಶಿಫಾರಸುಗಾರರಿಲ್ಲ. ಅವರು ದೇವಭಯವುಳ್ಳವರಾಗುವುದಕ್ಕಾಗಿ. | وَأَنذِرۡ بِهِ ٱلَّذِينَ يَخَافُونَ أَن يُحۡشَرُوٓاْ إِلَىٰ رَبِّهِمۡ لَيۡسَ لَهُم مِّن دُونِهِۦ وَلِيّٞ وَلَا شَفِيعٞ لَّعَلَّهُمۡ يَتَّقُونَ ٥١ |
| 52. ತಮ್ಮ ಪರಿಪಾಲಕನ (ಅಲ್ಲಾಹನ) ಸಂಪ್ರೀತಿಯನ್ನು ಬಯಸುತ್ತಾ ಮುಂಜಾನೆ ಮತ್ತು ಸಂಜೆ ಅವನನ್ನು ಕರೆದು ಪ್ರಾರ್ಥಿಸುವವರನ್ನು ದೂರ ಮಾಡಬೇಡಿ.[1] ಅವರನ್ನು ವಿಚಾರಣೆ ಮಾಡುವ ಹೊಣೆ ನಿಮಗಿಲ್ಲ. ನಿಮ್ಮನ್ನು ವಿಚಾರಣೆ ಮಾಡುವ ಹೊಣೆ ಅವರಿಗಿಲ್ಲ. ನೀವು ಅವರನ್ನು ದೂರ ಮಾಡಿದರೆ, ನೀವು ಅಕ್ರಮಿಗಳಲ್ಲಿ ಸೇರಿ ಬಿಡುವಿರಿ. | وَلَا تَطۡرُدِ ٱلَّذِينَ يَدۡعُونَ رَبَّهُم بِٱلۡغَدَوٰةِ وَٱلۡعَشِيِّ يُرِيدُونَ وَجۡهَهُۥۖ مَا عَلَيۡكَ مِنۡ حِسَابِهِم مِّن شَيۡءٖ وَمَا مِنۡ حِسَابِكَ عَلَيۡهِم مِّن شَيۡءٖ فَتَطۡرُدَهُمۡ فَتَكُونَ مِنَ ٱلظَّٰلِمِينَ ٥٢ |
| 53. ಹೀಗೆ ನಾವು ಅವರಲ್ಲಿ ಕೆಲವರನ್ನು ಇತರ ಕೆಲವರ ಮೂಲಕ ಪರೀಕ್ಷಿಸಿದೆವು. "ಅಲ್ಲಾಹು ನಮ್ಮ ನಡುವೆ ಅನುಗ್ರಹ ನೀಡಿ ಆಶೀರ್ವದಿಸಿದ್ದು ಇವರನ್ನೇ ಏನು?" ಎಂದು ಅವರು (ಸತ್ಯನಿಷೇಧಿಗಳು) ಹೇಳುವುದಕ್ಕಾಗಿ. ಕೃತಜ್ಞರಾಗಿರುವವರ ಬಗ್ಗೆ ಅಲ್ಲಾಹು ಅತಿಹೆಚ್ಚು ತಿಳಿದವನಲ್ಲವೇ? | وَكَذَٰلِكَ فَتَنَّا بَعۡضَهُم بِبَعۡضٖ لِّيَقُولُوٓاْ أَهَٰٓؤُلَآءِ مَنَّ ٱللَّهُ عَلَيۡهِم مِّنۢ بَيۡنِنَآۗ أَلَيۡسَ ٱللَّهُ بِأَعۡلَمَ بِٱلشَّٰكِرِينَ ٥٣ |
| 54. ನಮ್ಮ ವಚನಗಳಲ್ಲಿ ವಿಶ್ವಾಸವಿಡುವವರು ನಿಮ್ಮ ಬಳಿಗೆ ಬಂದರೆ ಹೇಳಿರಿ: "ನಿಮ್ಮ ಮೇಲೆ ಶಾಂತಿಯಿರಲಿ; ನಿಮ್ಮ ಪರಿಪಾಲಕನು ದಯೆ ತೋರುವುದನ್ನು ಸ್ವಯಂ ತನ್ನ ಮೇಲೆ ಕಡ್ಡಾಯಗೊಳಿಸಿದ್ದಾನೆ. ನಿಮ್ಮಲ್ಲಿ ಒಬ್ಬರು ಅರಿವಿಲ್ಲದೆ ಒಂದು ತಪ್ಪು ಮಾಡಿ, ನಂತರ ಪಶ್ಚಾತ್ತಾಪಪಟ್ಟು ಸುಧಾರಿಸಿಕೊಂಡರೆ, ನಿಶ್ಚಯವಾಗಿಯೂ ಅವನು (ಅಲ್ಲಾಹು) ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ." | وَإِذَا جَآءَكَ ٱلَّذِينَ يُؤۡمِنُونَ بِـَٔايَٰتِنَا فَقُلۡ سَلَٰمٌ عَلَيۡكُمۡۖ كَتَبَ رَبُّكُمۡ عَلَىٰ نَفۡسِهِ ٱلرَّحۡمَةَ أَنَّهُۥ مَنۡ عَمِلَ مِنكُمۡ سُوٓءَۢا بِجَهَٰلَةٖ ثُمَّ تَابَ مِنۢ بَعۡدِهِۦ وَأَصۡلَحَ فَأَنَّهُۥ غَفُورٞ رَّحِيمٞ ٥٤ |
| 55. ಈ ರೀತಿ ನಾವು ವಚನಗಳನ್ನು ವಿವರಿಸಿಕೊಡುತ್ತೇವೆ. ಅಪರಾಧಿಗಳ ಮಾರ್ಗವು ನಿಚ್ಚಳವಾಗುವುದಕ್ಕಾಗಿ. | وَكَذَٰلِكَ نُفَصِّلُ ٱلۡأٓيَٰتِ وَلِتَسۡتَبِينَ سَبِيلُ ٱلۡمُجۡرِمِينَ ٥٥ |
| 56. ಹೇಳಿರಿ: "ನಿಶ್ಚಯವಾಗಿಯೂ, ನೀವು ಅಲ್ಲಾಹನನ್ನು | قُلۡ إِنِّي نُهِيتُ أَنۡ أَعۡبُدَ ٱلَّذِينَ تَدۡعُونَ مِن |

[1] ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅನುಯಾಯಿಗಳಲ್ಲಿ ಗುಲಾಮರು, ಬಡವರು ಮತ್ತು ದಬ್ಬಾಳಿಕೆಗೆ ಒಳಗಾದವರು ಇದ್ದರು. ಇವರು ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಜೊತೆಯಲ್ಲಿದ್ದುದರಿಂದ ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಬಳಿಗೆ ಬರಲು ಕುರೈಷ್ ಮುಖಂಡರಿಗೆ ಅಸಹ್ಯವಾಗುತ್ತಿತ್ತು. ಅವರನ್ನು ದೂರ ಮಾಡಿದರೆ ನಾವು ನಿಮ್ಮ ಬಳಿಗೆ ಬರುತ್ತೇವೆಂದು ಅವರು ಹೇಳುತ್ತಿದ್ದರು.

ದُونِ ٱللَّهِۚ قُل لَّآ أَتَّبِعُ أَهۡوَآءَكُمۡ قَدۡ ضَلَلۡتُ إِذٗا وَمَآ أَنَا۠ مِنَ ٱلۡمُهۡتَدِينَ ٥٦

ಬಿಟ್ಟು ಯಾರನ್ನು ಕರೆದು ಪ್ರಾರ್ಥಿಸುತ್ತೀರೋ ಅವರನ್ನು ಆರಾಧಿಸುವುದನ್ನು ನನಗೆ ವಿರೋಧಿಸಲಾಗಿದೆ." ಹೇಳಿರಿ: "ನಾನು ನಿಮ್ಮ ಸ್ವೇಚ್ಛೆಗಳನ್ನು ಹಿಂಬಾಲಿಸುವುದಿಲ್ಲ. ಹಿಂಬಾಲಿಸಿದರೆ ನಾನು ಖಂಡಿತ ದಾರಿತಪ್ಪುವೆನು ಮತ್ತು ಸನ್ಮಾರ್ಗಿಗಳಲ್ಲಿ ಸೇರದವನಾಗುವೆನು."

---

قُلۡ إِنِّي عَلَىٰ بَيِّنَةٖ مِّن رَّبِّي وَكَذَّبۡتُم بِهِۦۚ مَا عِندِي مَا تَسۡتَعۡجِلُونَ بِهِۦٓۚ إِنِ ٱلۡحُكۡمُ إِلَّا لِلَّهِۖ يَقُصُّ ٱلۡحَقَّۖ وَهُوَ خَيۡرُ ٱلۡفَٰصِلِينَ ٥٧

57. ಹೇಳಿರಿ: "ನಿಶ್ಚಯವಾಗಿಯೂ ನಾನು ನನ್ನ ಪರಿಪಾಲಕನ (ಅಲ್ಲಾಹನ) ಸ್ಪಷ್ಟ ಸಾಕ್ಷ್ಯಾಧಾರಗಳಲ್ಲಿದ್ದೇನೆ. ಆದರೆ ನೀವು ಅದನ್ನು ನಿಷೇಧಿಸಿದ್ದೀರಿ. ನೀವು ತ್ವರೆ ಮಾಡುತ್ತಿರುವ ಶಿಕ್ಷೆ ನನ್ನ ವಶದಲ್ಲಿಲ್ಲ. ಆಜ್ಞಾಧಿಕಾರವಿರುವುದು ಅಲ್ಲಾಹನಿಗೆ ಮಾತ್ರ. ಅವನು ಸತ್ಯವನ್ನು ತಿಳಿಸುತ್ತಾನೆ. ಅವನು ತೀರ್ಪು ನೀಡುವವರಲ್ಲಿ ಅತ್ಯುತ್ತಮನಾಗಿದ್ದಾನೆ."

---

قُل لَّوۡ أَنَّ عِندِي مَا تَسۡتَعۡجِلُونَ بِهِۦ لَقُضِيَ ٱلۡأَمۡرُ بَيۡنِي وَبَيۡنَكُمۡۗ وَٱللَّهُ أَعۡلَمُ بِٱلظَّٰلِمِينَ ٥٨

58. ಹೇಳಿರಿ: "ನೀವು ತ್ವರೆ ಮಾಡುವ ಶಿಕ್ಷೆ ನನ್ನ ವಶದಲ್ಲಿರುತ್ತಿದ್ದರೆ ನನ್ನ ಮತ್ತು ನಿಮ್ಮ ಮಧ್ಯೆ ವಿಷಯವು ತೀರ್ಮಾನವಾಗಿ ಬಿಡುತ್ತಿತ್ತು. ಅಲ್ಲಾಹು ಅಕ್ರಮಿಗಳ ಬಗ್ಗೆ ಬಹಳ ಚೆನ್ನಾಗಿ ತಿಳಿದಿದ್ದಾನೆ."

---

وَعِندَهُۥ مَفَاتِحُ ٱلۡغَيۡبِ لَا يَعۡلَمُهَآ إِلَّا هُوَۚ وَيَعۡلَمُ مَا فِي ٱلۡبَرِّ وَٱلۡبَحۡرِۚ وَمَا تَسۡقُطُ مِن وَرَقَةٍ إِلَّا يَعۡلَمُهَا وَلَا حَبَّةٖ فِي ظُلُمَٰتِ ٱلۡأَرۡضِ وَلَا رَطۡبٖ وَلَا يَابِسٍ إِلَّا فِي كِتَٰبٖ مُّبِينٖ ٥٩

59. ಅಗೋಚರ ವಿಷಯಗಳ ಖಜಾನೆಗಳಿರುವುದು[1] ಅಲ್ಲಾಹನ ಬಳಿ ಮಾತ್ರ. ಅವನಲ್ಲದೆ ಯಾರಿಗೂ ಅದು ತಿಳಿದಿಲ್ಲ. ನೆಲದಲ್ಲಿ ಮತ್ತು ಕಡಲಲ್ಲಿರುವುದನ್ನು ಅವನು ತಿಳಿಯುತ್ತಾನೆ. ಅವನು ತಿಳಿಯದೆ ಒಂದೇ ಒಂದು ಎಲೆಯೂ ಉದುರುವುದಿಲ್ಲ. ಭೂಮಿಯ ಗಾಢಾಂಧಕಾರಗಳಲ್ಲಿರುವ ಒಂದು ಧಾನ್ಯವಾಗಲಿ, ಹಸಿ ಅಥವಾ ಒಣಗಿದ ಯಾವುದೇ ವಸ್ತುವಾಗಲಿ ಒಂದು ಸ್ಪಷ್ಟ ಗ್ರಂಥದಲ್ಲಿ ದಾಖಲಾಗದೆ ಉಳಿದಿಲ್ಲ."

---

وَهُوَ ٱلَّذِي يَتَوَفَّىٰكُم بِٱلَّيۡلِ وَيَعۡلَمُ مَا جَرَحۡتُم بِٱلنَّهَارِ ثُمَّ يَبۡعَثُكُمۡ فِيهِ لِيُقۡضَىٰٓ أَجَلٞ مُّسَمّٗىۖ ثُمَّ إِلَيۡهِ مَرۡجِعُكُمۡ ثُمَّ يُنَبِّئُكُم بِمَا كُنتُمۡ تَعۡمَلُونَ ٦٠

60. ರಾತ್ರಿಯಲ್ಲಿ (ನಿದ್ರಿಸುವಾಗ) ಅವನು ನಿಮ್ಮ ಆತ್ಮಗಳನ್ನು ವಶಪಡಿಸುತ್ತಾನೆ ಮತ್ತು ನೀವು ಹಗಲಿನಲ್ಲಿ ಮಾಡಿದ ಕರ್ಮಗಳನ್ನು ತಿಳಿಯುತ್ತಾನೆ. ನಂತರ ನಿಶ್ಚಿತ ಜೀವಿತಾವಧಿಯನ್ನು ಪೂರ್ಣಗೊಳಿಸಲು ಅವನು ನಿಮ್ಮನ್ನು ಹಗಲಿನಲ್ಲಿ (ನಿದ್ದೆಯಿಂದ) ಎಬ್ಬಿಸುತ್ತಾನೆ. ನಂತರ ನಿಮ್ಮನ್ನು ಅವನ ಬಳಿಗೆ ಮರಳಿಸಲಾಗುತ್ತದೆ. ನಂತರ ನೀವು ಮಾಡಿದ ಕರ್ಮಗಳನ್ನು ಅವನು ನಿಮಗೆ ತಿಳಿಸುತ್ತಾನೆ.

---

وَهُوَ ٱلۡقَاهِرُ فَوۡقَ عِبَادِهِۦۖ وَيُرۡسِلُ عَلَيۡكُمۡ

61. ಅವನಿಗೆ ಅವನ ದಾಸರ ಮೇಲೆ ಪರಮಾಧಿಕಾರವಿದೆ. ನಿಮ್ಮ

---

[1] ಮಫಾತಿಹ್ ಎಂದರೆ ಖಜಾನೆಗಳು, ಕೀಲಿಕೈಗಳು ಎಂಬ ಅರ್ಥಗಳಿವೆ. ಅದೃಶ್ಯ ವಿಷಯಗಳನ್ನು ತಿಳಿದಿರುವವನು ಅಲ್ಲಾಹು ಮಾತ್ರ. ಸೃಷ್ಟಿಗಳಲ್ಲಿ ಯಾರಿಗೂ ಅದೃಶ್ಯ ಜ್ಞಾನವಿಲ್ಲ.

ಮೇಲ್ನೋಟಕ್ಕೆ ಅವನು ಕಾವಲುಗಾರರನ್ನು (ದೇವದೂತರನ್ನು) ಕಳುಹಿಸುತ್ತಾನೆ. ಎಲ್ಲಿಯವರೆಗೆಂದರೆ, ನಿಮ್ಮಲ್ಲಿ ಒಬ್ಬನಿಗೆ ಮರಣವು ಸನ್ನಿಹಿತವಾದಾಗ, ನಮ್ಮ ದೂತರು ಅವನ ಆತ್ಮವನ್ನು ವಶಪಡಿಸುತ್ತಾರೆ. ಅವರು (ಕರ್ತವ್ಯ ನಿರ್ವಹಣೆಯಲ್ಲಿ) ಲೋಪವೆಸಗುವುದಿಲ್ಲ.

حَفَظَةً حَتَّىٰٓ إِذَا جَآءَ أَحَدَكُمُ ٱلۡمَوۡتُ تَوَفَّتۡهُ رُسُلُنَا وَهُمۡ لَا يُفَرِّطُونَ ٦١

62. ನಂತರ ಅವರನ್ನು ಅವರ ನೈಜ ರಕ್ಷಕನಾದ ಅಲ್ಲಾಹನ ಬಳಿಗೆ ಮರಳಿಸಲಾಗುತ್ತದೆ. ತಿಳಿಯಿರಿ! ಆಜ್ಞಾಧಿಕಾರವಿರುವುದು ಅವನಿಗೆ ಮಾತ್ರ. ಅವನು ಅತಿವೇಗವಾಗಿ ವಿಚಾರಣೆ ಮಾಡುತ್ತಾನೆ.

ثُمَّ رُدُّوٓاْ إِلَى ٱللَّهِ مَوۡلَىٰهُمُ ٱلۡحَقِّۚ أَلَا لَهُ ٱلۡحُكۡمُ وَهُوَ أَسۡرَعُ ٱلۡحَٰسِبِينَ ٦٢

63. ಹೇಳಿರಿ: "ಅಲ್ಲಾಹು ನಮ್ಮನ್ನು ಈ ಸಂಕಷ್ಟದಿಂದ ಪಾರು ಮಾಡಿದರೆ ಖಂಡಿತವಾಗಿಯೂ ನಾವು ಕೃತಜ್ಞರಾಗಿರುತ್ತೇವೆ" ಎಂದು ಹೇಳುತ್ತಾ ನೀವು ವಿನಮ್ರತೆಯಿಂದ ಮತ್ತು ರಹಸ್ಯವಾಗಿ ಅವನನ್ನು ಕರೆದು ಪ್ರಾರ್ಥಿಸುವಾಗ, ನೆಲ ಮತ್ತು ಕಡಲಿನ ಗಾಢಾಂಧಕಾರಗಳಿಂದ ನಿಮ್ಮನ್ನು ಕಾಪಾಡುವುದು ಯಾರು?

قُلۡ مَن يُنَجِّيكُم مِّن ظُلُمَٰتِ ٱلۡبَرِّ وَٱلۡبَحۡرِ تَدۡعُونَهُۥ تَضَرُّعٗا وَخُفۡيَةٗ لَّئِنۡ أَنجَىٰنَا مِنۡ هَٰذِهِۦ لَنَكُونَنَّ مِنَ ٱلشَّٰكِرِينَ ٦٣

64. ಹೇಳಿರಿ: "ಅದರಿಂದ ಮತ್ತು ಇತರೆಲ್ಲಾ ಅನಾಹುತಗಳಿಂದ ಅಲ್ಲಾಹನೇ ನಿಮ್ಮನ್ನು ಪಾರು ಮಾಡುತ್ತಾನೆ. ಅದರ ಬಳಿಕವೂ ನೀವು ಅವನೊಂದಿಗೆ ಸಹಭಾಗಿತ್ವ (ಶಿರ್ಕ್) ಮಾಡುತ್ತೀರಿ."

قُلِ ٱللَّهُ يُنَجِّيكُم مِّنۡهَا وَمِن كُلِّ كَرۡبٖ ثُمَّ أَنتُمۡ تُشۡرِكُونَ ٦٤

65. ಹೇಳಿರಿ: "ನಿಮ್ಮ ಮೇಲ್ಭಾಗದಿಂದ ಅಥವಾ ನಿಮ್ಮ ಕಾಲುಗಳ ಅಡಿಭಾಗದಿಂದ ನಿಮಗೆ ಶಿಕ್ಷೆಯನ್ನು ಕಳುಹಿಸಲು, ಅಥವಾ ನಿಮ್ಮನ್ನು ವಿಭಿನ್ನ ಪಂಗಡಗಳನ್ನಾಗಿ ಮಾಡಿ ಗೊಂದಲಗೊಳಿಸಿ, ನೀವು ಪರಸ್ಪರ ಹಿಂಸೆ ಅನುಭವಿಸುವಂತೆ ಮಾಡಲು ಅವನಿಗೆ ಸಾಮರ್ಥ್ಯವಿದೆ." ನಾವು ಹೇಗೆ ವಚನಗಳನ್ನು ವಿವರಿಸಿಕೊಡುತ್ತೇವೆಂದು ನೋಡಿ. ಅವರು ಅರ್ಥಮಾಡಿಕೊಳ್ಳುವುದಕ್ಕಾಗಿ.

قُلۡ هُوَ ٱلۡقَادِرُ عَلَىٰٓ أَن يَبۡعَثَ عَلَيۡكُمۡ عَذَابٗا مِّن فَوۡقِكُمۡ أَوۡ مِن تَحۡتِ أَرۡجُلِكُمۡ أَوۡ يَلۡبِسَكُمۡ شِيَعٗا وَيُذِيقَ بَعۡضَكُم بَأۡسَ بَعۡضٍۗ ٱنظُرۡ كَيۡفَ نُصَرِّفُ ٱلۡأٓيَٰتِ لَعَلَّهُمۡ يَفۡقَهُونَ ٦٥

66. ಇದು ಸತ್ಯವಾಗಿದ್ದೂ ಸಹ ನಿಮ್ಮ ಜನರು ಇದನ್ನು ನಿಷೇಧಿಸಿದ್ದಾರೆ. ಹೇಳಿರಿ: "ನಾನು ನಿಮ್ಮ ಮೇಲ್ನೋಟ ವಹಿಸುವವನಲ್ಲ."

وَكَذَّبَ بِهِۦ قَوۡمُكَ وَهُوَ ٱلۡحَقُّۚ قُل لَّسۡتُ عَلَيۡكُم بِوَكِيلٖ ٦٦

67. ಪ್ರತಿಯೊಂದು ಘಟನೆಗೂ ಒಂದು ನಿಶ್ಚಿತ ಸಮಯವಿದೆ. ನೀವು ಸದ್ಯವೇ ತಿಳಿಯುವಿರಿ.

لِّكُلِّ نَبَإٖ مُّسۡتَقَرّٞۚ وَسَوۡفَ تَعۡلَمُونَ ٦٧

68. ಜನರು ಅಲ್ಲಾಹನ ವಚನಗಳ ಬಗ್ಗೆ ಆಕ್ಷೇಪಾರ್ಹವಾಗಿ ಮಾತನಾಡುವುದನ್ನು ಕಂಡರೆ, ಅವರು ಬೇರೆ ವಿಷಯಕ್ಕೆ ಪ್ರವೇಶಿಸುವ ತನಕ ಅವರೊಡನೆ ಕುಳಿತುಕೊಳ್ಳಬೇಡಿ.

وَإِذَا رَأَيۡتَ ٱلَّذِينَ يَخُوضُونَ فِيٓ ءَايَٰتِنَا فَأَعۡرِضۡ عَنۡهُمۡ حَتَّىٰ يَخُوضُواْ فِي حَدِيثٍ غَيۡرِهِۦۚ وَإِمَّا يُنسِيَنَّكَ ٱلشَّيۡطَٰنُ فَلَا تَقۡعُدۡ بَعۡدَ ٱلذِّكۡرَىٰ

ಶೈತಾನನು ನಿಮಗೆ ಮರೆಯುವಂತೆ ಮಾಡಿದರೆ ನೆನಪಾದ ನಂತರ ಅಕ್ರಮವೆಸಗುವ ಆ ಜನರೊಡನೆ ಕುಳಿತುಕೊಳ್ಳಬೇಡಿ.

مَعَ ٱلْقَوْمِ ٱلظَّٰلِمِينَ ﴿٦٨﴾

---

69. ಅವರ ವಿಚಾರಣೆ ಮಾಡುವ ಯಾವುದೇ ಹೊಣೆ ದೇವಭಯವುಳ್ಳವರಿಗಿಲ್ಲ. ಆದರೆ ಅವರಿಗೆ ನೆನಪಿಸಿಕೊಡಬೇಕು. ಅವರು ದೇವಭಯದಿಂದ ಜೀವಿಸುವುದಕ್ಕಾಗಿ.

وَمَا عَلَى ٱلَّذِينَ يَتَّقُونَ مِنْ حِسَابِهِم مِّن شَىْءٍ
وَلَٰكِن ذِكْرَىٰ لَعَلَّهُمْ يَتَّقُونَ ﴿٦٩﴾

---

70. ತಮ್ಮ ಧರ್ಮವನ್ನು ಆಟ ಮತ್ತು ಮನೋರಂಜನೆಯಾಗಿ ಸ್ವೀಕರಿಸಿದವರನ್ನು ಹಾಗೂ ಇಹಲೋಕದ ಜೀವನಕ್ಕೆ ಮರುಳಾದವರನ್ನು ಅವರ ಪಾಡಿಗೆ ಬಿಟ್ಟುಬಿಡಿ. ಜನರು ತಮ್ಮ ಕರ್ಮಗಳ ಕಾರಣದಿಂದ ನಾಶವಾಗದಿರುವುದಕ್ಕಾಗಿ ಇದರ (ಕುರ್‌ಆನಿನ) ಮೂಲಕ ಅವರಿಗೆ ಉಪದೇಶ ನೀಡಿ. ಅವರಿಗೆ ಅಲ್ಲಾಹನ ಹೊರತು ಯಾವುದೇ ರಕ್ಷಕ ಅಥವಾ ಶಿಫಾರಸುಗಾರನಿಲ್ಲ. ಅವರು ಎಲ್ಲಾ ರೀತಿಯ ಪರಿಹಾರಗಳನ್ನು ನೀಡಿದರೂ ಅದನ್ನು ಅವರಿಂದ ಸ್ವೀಕರಿಸಲಾಗುವುದಿಲ್ಲ. ಅವರೇ ತಮ್ಮ ಕರ್ಮಗಳ ಕಾರಣದಿಂದ ನಾಶವಾದವರು. ಅವರು ಸತ್ಯವನ್ನು ನಿಷೇಧಿಸುವ ಕಾರಣ ಅವರಿಗೆ ಕುದಿಯುವ ನೀರು ಮತ್ತು ಯಾತನಾಮಯ ಶಿಕ್ಷೆಯಿದೆ.

وَذَرِ ٱلَّذِينَ ٱتَّخَذُوا۟ دِينَهُمْ لَعِبًا وَلَهْوًا وَغَرَّتْهُمُ
ٱلْحَيَوٰةُ ٱلدُّنْيَا ۚ وَذَكِّرْ بِهِۦٓ أَن تُبْسَلَ نَفْسٌۢ
بِمَا كَسَبَتْ لَيْسَ لَهَا مِن دُونِ ٱللَّهِ وَلِىٌّ
وَلَا شَفِيعٌ وَإِن تَعْدِلْ كُلَّ عَدْلٍ لَّا يُؤْخَذْ
مِنْهَآ ۗ أُو۟لَٰٓئِكَ ٱلَّذِينَ أُبْسِلُوا۟ بِمَا كَسَبُوا۟ ۖ لَهُمْ
شَرَابٌ مِّنْ حَمِيمٍ وَعَذَابٌ أَلِيمٌۢ بِمَا كَانُوا۟
يَكْفُرُونَ ﴿٧٠﴾

---

71. ಹೇಳಿರಿ: “ಅಲ್ಲಾಹನನ್ನು ಬಿಟ್ಟು ನಮಗೆ ಉಪಕಾರ ಅಥವಾ ತೊಂದರೆ ಮಾಡಲು ಸಾಧ್ಯವಿಲ್ಲದವರನ್ನು ನಾವು ಕರೆದು ಪ್ರಾರ್ಥಿಸಬೇಕೇ? ಅಲ್ಲಾಹು ನಮಗೆ ಸನ್ಮಾರ್ಗವನ್ನು ತೋರಿಸಿದ ಬಳಿಕ ನಾವು ಹಿಂದಕ್ಕೆ (ಸತ್ಯನಿಷೇಧಕ್ಕೆ) ಮರಳಿ ಹೋಗುವಂತಾಗಬೇಕೇ? “ನಮ್ಮ ಬಳಿ ಬಾ” ಎಂದು ಸನ್ಮಾರ್ಗಕ್ಕೆ ಕರೆಯುವ ಗೆಳೆಯರಿದ್ದೂ ಸಹ, ಶೈತಾನರ ಆಮಿಷಕ್ಕೆ ಬಲಿಯಾಗಿ ಭೂಮಿಯಲ್ಲಿ ದಿಗ್ಭ್ರಾಂತನಾಗಿ ಅಲೆದಾಡುವ ವ್ಯಕ್ತಿಯಂತೆ ನಾವಾಗಬೇಕೇ?” ಹೇಳಿರಿ: “ನಿಶ್ಚಯವಾಗಿಯೂ ಅಲ್ಲಾಹನ ಮಾರ್ಗದರ್ಶನವೇ ನಿಜವಾದ ಮಾರ್ಗದರ್ಶನ. ಸರ್ವಲೋಕಗಳ ಪರಿಪಾಲಕನಿಗೆ (ಅಲ್ಲಾಹನಿಗೆ) ಶರಣಾಗಬೇಕೆಂದು ನಮಗೆ ಆಜ್ಞಾಪಿಸಲಾಗಿದೆ.”

قُلْ أَنَدْعُوا۟ مِن دُونِ ٱللَّهِ مَا لَا يَنفَعُنَا وَلَا
يَضُرُّنَا وَنُرَدُّ عَلَىٰٓ أَعْقَابِنَا بَعْدَ إِذْ هَدَىٰنَا ٱللَّهُ
كَٱلَّذِى ٱسْتَهْوَتْهُ ٱلشَّيَٰطِينُ فِى ٱلْأَرْضِ حَيْرَانَ
لَهُۥٓ أَصْحَٰبٌ يَدْعُونَهُۥٓ إِلَى ٱلْهُدَى ٱئْتِنَا ۗ قُلْ
إِنَّ هُدَى ٱللَّهِ هُوَ ٱلْهُدَىٰ ۖ وَأُمِرْنَا لِنُسْلِمَ لِرَبِّ
ٱلْعَٰلَمِينَ ﴿٧١﴾

---

72. “ನಮಾಝ್ ಸಂಸ್ಥಾಪಿಸಿರಿ ಮತ್ತು ಅಲ್ಲಾಹನನ್ನು ಭಯಪಡಿರಿ” ಎಂದು ಕೂಡ (ನಮಗೆ ಆಜ್ಞಾಪಿಸಲಾಗಿದೆ). ನಿಮ್ಮೆಲ್ಲರನ್ನೂ ಅವನ ಬಳಿಗೇ ಒಟ್ಟುಗೂಡಿಸಲಾಗುವುದು.

وَأَنْ أَقِيمُوا۟ ٱلصَّلَوٰةَ وَٱتَّقُوهُ ۚ وَهُوَ ٱلَّذِىٓ إِلَيْهِ
تُحْشَرُونَ ﴿٧٢﴾

---

73. ಭೂಮ್ಯಾಕಾಶಗಳನ್ನು ಸತ್ಯ ಸಹಿತ ಸೃಷ್ಟಿಸಿದವನು ಅವನೇ. ಅವನು “ಉಂಟಾಗು” ಎಂದು ಹೇಳುವ ದಿನ ಅದು

وَهُوَ ٱلَّذِى خَلَقَ ٱلسَّمَٰوَٰتِ وَٱلْأَرْضَ بِٱلْحَقِّ ۖ
وَيَوْمَ يَقُولُ كُن فَيَكُونُ ۚ قَوْلُهُ ٱلْحَقُّ ۚ وَلَهُ

ٱلْمُلْكُ يَوْمَ يُنفَخُ فِى ٱلصُّورِ ۚ عَـٰلِمُ ٱلْغَيْبِ وَٱلشَّهَـٰدَةِ ۚ وَهُوَ ٱلْحَكِيمُ ٱلْخَبِيرُ ﴿٧٣﴾

ಉಂಟಾಗುತ್ತದೆ. ಅವನ ಮಾತು ಸತ್ಯವಾಗಿದೆ. ಕಹಳೆಯಲ್ಲಿ ಊದಲಾಗುವ ದಿನ ಆಧಿಪತ್ಯವು ಅವನದ್ದಾಗಿದೆ. ಅವನು ದೃಶ್ಯ-ಅದೃಶ್ಯಗಳನ್ನು ತಿಳಿದವನು. ಅವನು ವಿವೇಕಪೂರ್ಣನು ಮತ್ತು ಸೂಕ್ಷ್ಮಜ್ಞಾನಿಯಾಗಿದ್ದಾನೆ.

---

وَإِذْ قَالَ إِبْرَٰهِيمُ لِأَبِيهِ ءَازَرَ أَتَتَّخِذُ أَصْنَامًا ءَالِهَةً ۖ إِنِّىٓ أَرَىٰكَ وَقَوْمَكَ فِى ضَلَـٰلٍ مُّبِينٍ ﴿٧٤﴾

74. ಇಬ್ರಾಹೀಮರು ತಮ್ಮ ತಂದೆ ಆಝರರನೊಡನೆ ಹೇಳಿದ ಸಂದರ್ಭ: "ನೀವು ವಿಗ್ರಹಗಳನ್ನು ದೇವರಾಗಿ ಸ್ವೀಕರಿಸಿದ್ದೀರಾ? ನಿಶ್ಚಯವಾಗಿಯೂ ನೀವು ಮತ್ತು ನಿಮ್ಮ ಜನರು ಸ್ಪಷ್ಟ ದುರ್ಮಾರ್ಗದಲ್ಲಿರುವುದನ್ನು ನಾನು ಕಾಣುತ್ತಿದ್ದೇನೆ."

---

وَكَذَٰلِكَ نُرِىٓ إِبْرَٰهِيمَ مَلَكُوتَ ٱلسَّمَـٰوَٰتِ وَٱلْأَرْضِ وَلِيَكُونَ مِنَ ٱلْمُوقِنِينَ ﴿٧٥﴾

75. ಈ ರೀತಿ ನಾವು ಇಬ್ರಾಹೀಮರಿಗೆ ಭೂಮ್ಯಾಕಾಶಗಳ ಆಧಿಪತ್ಯಗಳನ್ನು ತೋರಿಸಿಕೊಟ್ಟೆವು; ಅವರು ದೃಢವಿಶ್ವಾಸಿಗಳಲ್ಲಿ ಒಳಪಡುವುದಕ್ಕಾಗಿ.

---

فَلَمَّا جَنَّ عَلَيْهِ ٱلَّيْلُ رَءَا كَوْكَبًا ۖ قَالَ هَـٰذَا رَبِّى ۖ فَلَمَّآ أَفَلَ قَالَ لَآ أُحِبُّ ٱلْـَٔافِلِينَ ﴿٧٦﴾

76. ರಾತ್ರಿಯು ಅವರನ್ನು ಆವರಿಸಿದಾಗ ಅವರು ನಕ್ಷತ್ರವನ್ನು ಕಂಡರು. ಅವರು ಹೇಳಿದರು: "ಇವನೇ ನನ್ನ ಪರಿಪಾಲಕ!" ಆದರೆ ಅದು ಕಣ್ಮರೆಯಾದಾಗ ಅವರು ಹೇಳಿದರು: "ಕಣ್ಮರೆಯಾಗುವವರನ್ನು ನಾನು ಇಷ್ಟಪಡುವುದಿಲ್ಲ."

---

فَلَمَّا رَءَا ٱلْقَمَرَ بَازِغًا قَالَ هَـٰذَا رَبِّى ۖ فَلَمَّآ أَفَلَ قَالَ لَئِن لَّمْ يَهْدِنِى رَبِّى لَأَكُونَنَّ مِنَ ٱلْقَوْمِ ٱلضَّآلِّينَ ﴿٧٧﴾

77. ನಂತರ ಚಂದ್ರ ಉದಯಿಸುವುದನ್ನು ಕಂಡಾಗ ಅವರು ಹೇಳಿದರು: "ಇವನೇ ನನ್ನ ಪರಿಪಾಲಕ!" ಅದು ಕೂಡ ಕಣ್ಮರೆಯಾದಾಗ ಅವರು ಹೇಳಿದರು: "ನನ್ನ ಪರಿಪಾಲಕ ನನಗೆ ಸನ್ಮಾರ್ಗ ತೋರಿಸದಿದ್ದರೆ ನಾನು ದಾರಿತಪ್ಪಿದವರಲ್ಲಿ ಸೇರುವುದು ನಿಶ್ಚಿತ."

---

فَلَمَّا رَءَا ٱلشَّمْسَ بَازِغَةً قَالَ هَـٰذَا رَبِّى هَـٰذَآ أَكْبَرُ ۖ فَلَمَّآ أَفَلَتْ قَالَ يَـٰقَوْمِ إِنِّى بَرِىٓءٌ مِّمَّا تُشْرِكُونَ ﴿٧٨﴾

78. ನಂತರ ಸೂರ್ಯ ಉದಯಿಸುವುದನ್ನು ಕಂಡಾಗ ಅವರು ಹೇಳಿದರು: "ಇವನೇ ನನ್ನ ಪರಿಪಾಲಕ! ಇವನು ಬಹಳ ದೊಡ್ಡವನು!" ನಂತರ ಅದು ಕೂಡ ಕಣ್ಮರೆಯಾದಾಗ ಅವರು ಹೇಳಿದರು: "ಓ ನನ್ನ ಜನರೇ! ನಿಶ್ಚಯವಾಗಿಯೂ ನೀವು ಮಾಡುವ ಸಹಭಾಗಿತ್ವದಿಂದ (ಶಿರ್ಕ್‌ನಿಂದ) ನಾನು ಸಂಪೂರ್ಣ ಮುಕ್ತನಾಗಿದ್ದೇನೆ.[1]

---

إِنِّى وَجَّهْتُ وَجْهِىَ لِلَّذِى فَطَرَ ٱلسَّمَـٰوَٰتِ وَٱلْأَرْضَ حَنِيفًا ۖ وَمَآ أَنَا۠ مِنَ ٱلْمُشْرِكِينَ ﴿٧٩﴾

79. ಭೂಮ್ಯಾಕಾಶಗಳನ್ನು ಸೃಷ್ಟಿಸಿದವನಿಗೆ (ಅಲ್ಲಾಹನಿಗೆ) ನಾನು ನನ್ನ ಮುಖವನ್ನು ಏಕನಿಷ್ಠೆಯಿಂದ ತಿರುಗಿಸಿದ್ದೇನೆ. ನಾನು ಸಹಭಾಗಿತ್ವ (ಶಿರ್ಕ್) ಮಾಡುವವರಲ್ಲಿ ಸೇರಿದವನಲ್ಲ."

---

[1] ಇಬ್ರಾಹೀಮರ (ಅವರ ಮೇಲೆ ಶಾಂತಿಯಿರಲಿ) ಕಾಲದ ಜನರು ವಿಗ್ರಹಗಳನ್ನು ಮಾತ್ರವಲ್ಲದೆ ಆಕಾಶಕಾಯಗಳನ್ನು ಕೂಡ ಪೂಜಿಸುತ್ತಿದ್ದರು. ಸೂರ್ಯ, ಚಂದ್ರ, ನಕ್ಷತ್ರಗಳು ದೇವರುಗಳೆಂದು ಅವರು ನಂಬುತ್ತಿದ್ದರು. ಇಬ್ರಾಹೀಮರು (ಅವರ ಮೇಲೆ ಶಾಂತಿಯಿರಲಿ) ಇಲ್ಲಿ ಅವರ ಈ ನಂಬಿಕೆಯು ಎಷ್ಟು ಬಾಲಿಶವೆಂದು ಅವರಿಗೆ ಮನವರಿಕೆ ಮಾಡಿಕೊಡಲು ಪ್ರಯತ್ನಿಸುತ್ತಿದ್ದಾರೆ.

80. ಅವರ ಜನರು ಅವರೊಂದಿಗೆ ತರ್ಕಿಸಿದರು. ಅವರು ಹೇಳಿದರು: “ನೀವು ಅಲ್ಲಾಹನ ವಿಷಯದಲ್ಲಿ ನನ್ನೊಂದಿಗೆ ತರ್ಕಿಸುತ್ತೀರಾ? ಅವನು ನನಗೆ ಸನ್ಮಾರ್ಗವನ್ನು ತೋರಿಸಿದ್ದಾನೆ. ನೀವು ಅವನೊಡನೆ ಸಹಭಾಗಿಯಾಗಿ ಮಾಡುವ ಯಾರನ್ನೂ (ಯಾವುದೇ ದೇವರನ್ನೂ) ನಾನು ಭಯಪಡುವುದಿಲ್ಲ. ನನ್ನ ಪರಿಪಾಲಕನು (ಅಲ್ಲಾಹು) ಇಚ್ಛಿಸುವುದು ಮಾತ್ರ ಸಂಭವಿಸುತ್ತದೆ. ನನ್ನ ಪರಿಪಾಲಕನ (ಅಲ್ಲಾಹನ) ಜ್ಞಾನವು ಎಲ್ಲಾ ವಿಷಯಗಳನ್ನೂ ಒಳಗೊಂಡಿದೆ. ನೀವು ಉಪದೇಶ ಪಡೆಯುವುದಿಲ್ಲವೇ?

وَحَآجَّهُۥ قَوۡمُهُۥۚ قَالَ أَتُحَٰٓجُّوٓنِّي فِي ٱللَّهِ وَقَدۡ هَدَىٰنِۚ وَلَآ أَخَافُ مَا تُشۡرِكُونَ بِهِۦٓ إِلَّآ أَن يَشَآءَ رَبِّي شَيۡـٔٗاۚ وَسِعَ رَبِّي كُلَّ شَيۡءٍ عِلۡمًاۚ أَفَلَا تَتَذَكَّرُونَ ﴿٨٠﴾

81. ನೀವು (ಅಲ್ಲಾಹನೊಡನೆ) ಸಹಭಾಗಿಯಾಗಿ ಮಾಡಿದವರನ್ನು ನಾನು ಹೇಗೆ ಭಯಪಡಲಿ? ಅಲ್ಲಾಹು ಯಾವುದೇ ಸಾಕ್ಷ್ಯಾಧಾರ ಅವತೀರ್ಣಗೊಳಿಸದ ವಸ್ತುಗಳನ್ನು ಅವನೊಡನೆ ಸಹಭಾಗಿಯಾಗಿ ಮಾಡಲು ನೀವು (ಸ್ವಲ್ಪವೂ) ಭಯಪಡುವುದಿಲ್ಲ. ಹೀಗಿರುವಾಗ ಈ ಎರಡು ಪಕ್ಷಗಳಲ್ಲಿ ನಿರ್ಭಯಕ್ಕೆ ಹೆಚ್ಚು ಅರ್ಹರು ಯಾರು? ನಿಮಗೆ ತಿಳಿದಿದ್ದರೆ ಹೇಳಿರಿ.”[1]

وَكَيۡفَ أَخَافُ مَآ أَشۡرَكۡتُمۡ وَلَا تَخَافُونَ أَنَّكُمۡ أَشۡرَكۡتُم بِٱللَّهِ مَا لَمۡ يُنَزِّلۡ بِهِۦ عَلَيۡكُمۡ سُلۡطَٰنٗاۚ فَأَيُّ ٱلۡفَرِيقَيۡنِ أَحَقُّ بِٱلۡأَمۡنِۖ إِن كُنتُمۡ تَعۡلَمُونَ ﴿٨١﴾

82. ಸತ್ಯವಿಶ್ವಾಸಿಗಳು ಮತ್ತು ತಮ್ಮ ವಿಶ್ವಾಸದಲ್ಲಿ ಸಹಭಾಗಿತ್ವವನ್ನು (ಶಿರ್ಕ್) ಬೆರೆಸದವರು ಯಾರೋ—ಅವರಿಗೆ ನಿರ್ಭಯವಿದೆ. ಅವರೇ ಸನ್ಮಾರ್ಗ ಪಡೆದವರು.

ٱلَّذِينَ ءَامَنُواْ وَلَمۡ يَلۡبِسُوٓاْ إِيمَٰنَهُم بِظُلۡمٍ أُوْلَٰٓئِكَ لَهُمُ ٱلۡأَمۡنُ وَهُم مُّهۡتَدُونَ ﴿٨٢﴾

83. ಇದು ನಾವು ಇಬ್ರಾಹೀಮರಿಗೆ ಅವರ ಜನರ ವಿರುದ್ಧ ತರ್ಕಿಸಲು ನೀಡಿದ ಪುರಾವೆಯಾಗಿದೆ. ನಾವು ಇಚ್ಛಿಸುವವರ ಸ್ಥಾನಮಾನಗಳನ್ನು ನಾವು ಏರಿಸುತ್ತೇವೆ. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು ವಿವೇಕಪೂರ್ಣನು ಮತ್ತು ಸರ್ವಜ್ಞನಾಗಿದ್ದಾನೆ.

وَتِلۡكَ حُجَّتُنَآ ءَاتَيۡنَٰهَآ إِبۡرَٰهِيمَ عَلَىٰ قَوۡمِهِۦۚ نَرۡفَعُ دَرَجَٰتٖ مَّن نَّشَآءُۗ إِنَّ رَبَّكَ حَكِيمٌ عَلِيمٞ ﴿٨٣﴾

84. ನಾವು ಅವರಿಗೆ ಇಸ್‌ಹಾಕ್ ಮತ್ತು ಯಾಕೂಬರನ್ನು ದಯಪಾಲಿಸಿದೆವು. ಅವರೆಲ್ಲರಿಗೂ ನಾವು ಸನ್ಮಾರ್ಗವನ್ನು ತೋರಿಸಿದೆವು. ಅವರಿಗಿಂತ ಮೊದಲು ನಾವು ನೂಹರಿಗೆ ಸನ್ಮಾರ್ಗವನ್ನು ತೋರಿಸಿದೆವು. ಅವರ ಸಂತಾನದಲ್ಲಿ ಸೇರಿದ ದಾವೂದ್, ಸುಲೈಮಾನ್, ಅಯ್ಯೂಬ್, ಯೂಸುಫ್, ಮೂಸಾ ಮತ್ತು ಹಾರೂನರಿಗೂ ಕೂಡ. ಒಳಿತು ಮಾಡುವವರಿಗೆ ನಾವು ಈ ರೀತಿ ಪ್ರತಿಫಲವನ್ನು ನೀಡುವೆವು.

وَوَهَبۡنَا لَهُۥٓ إِسۡحَٰقَ وَيَعۡقُوبَۚ كُلًّا هَدَيۡنَاۚ وَنُوحًا هَدَيۡنَا مِن قَبۡلُۖ وَمِن ذُرِّيَّتِهِۦ دَاوُۥدَ وَسُلَيۡمَٰنَ وَأَيُّوبَ وَيُوسُفَ وَمُوسَىٰ وَهَٰرُونَۚ وَكَذَٰلِكَ نَجۡزِي ٱلۡمُحۡسِنِينَ ﴿٨٤﴾

[1] ಅಲ್ಲಾಹನ ಸೃಷ್ಟಿಗಳನ್ನು ಅವನೊಡನೆ ಸಹಭಾಗಿಯಾಗಿ ಮಾಡಿ ನೀವು ಅವರನ್ನು ದೇವರೆಂದು ಕರೆದು ಆರಾಧಿಸುತ್ತೀರಿ. ಅವರು ದೇವರು ಎನ್ನುವುದಕ್ಕೆ ಅಲ್ಲಾಹು ಯಾವುದೇ ಪುರಾವೆಯನ್ನೂ ಇಳಿಸಿಲ್ಲ. ಅಲ್ಲಾಹನ ಆಜ್ಞೆಗೆ ವಿರುದ್ಧವಾಗಿ ಅವರನ್ನು ದೇವರನ್ನಾಗಿ ಮಾಡಿ ಪ್ರಾರ್ಥಿಸಲು ನೀವು ಸ್ವಲ್ಪವೂ ಭಯಪಡುವುದಿಲ್ಲ. ನಾನು ಅಲ್ಲಾಹನನ್ನು ಮಾತ್ರ ಆರಾಧಿಸುತ್ತೇನೆ ಮತ್ತು ಅವನನ್ನು ಮಾತ್ರ ಭಯಪಡುತ್ತೇನೆ. ಹೀಗಿರುವಾಗ, ಹೆಚ್ಚು ನಿರ್ಭಯರಾಗಿರುವವರು ಯಾರು? ನಾನೋ ಅಥವಾ ನೀವೋ? ಸರಿಯಾಗಿ ಆಲೋಚನೆ ಮಾಡಿ ಹೇಳಿ.

85. ಝುಕರಿಯ್ಯಾ, ಯಹ್ಯಾ, ಈಸಾ ಮತ್ತು ಇಲ್ಯಾಸರಿಗೂ ಕೂಡ. ಅವರೆಲ್ಲರೂ ನೀತಿವಂತರಲ್ಲಿ ಸೇರಿದವರು.

وَزَكَرِيَّا وَيَحۡيَىٰ وَعِيسَىٰ وَإِلۡيَاسَۖ كُلّٞ مِّنَ ٱلصَّٰلِحِينَ ٨٥

86. ಇಸ್ಮಾಈಲ್, ಅಲ್‌ಯಸಅ್, ಯೂನುಸ್ ಮತ್ತು ಲೂತರಿಗೂ ಕೂಡ. ಅವರೆಲ್ಲರನ್ನೂ ನಾವು ಸರ್ವಲೋಕದವರಲ್ಲಿ ಶ್ರೇಷ್ಠಗೊಳಿಸಿದೆವು.

وَإِسۡمَٰعِيلَ وَٱلۡيَسَعَ وَيُونُسَ وَلُوطٗاۚ وَكُلّٗا فَضَّلۡنَا عَلَى ٱلۡعَٰلَمِينَ ٨٦

87. ಅವರ ಪೂರ್ವಜರು, ಅವರ ಮಕ್ಕಳು ಮತ್ತು ಸಹೋದರರಿಗೂ ಕೂಡ. ಅವರನ್ನು ನಾವು ವಿಶೇಷವಾಗಿ ಆರಿಸಿದೆವು ಮತ್ತು ನೇರಮಾರ್ಗಕ್ಕೆ ಮುನ್ನಡೆಸಿದೆವು.

وَمِنۡ ءَابَآئِهِمۡ وَذُرِّيَّٰتِهِمۡ وَإِخۡوَٰنِهِمۡۖ وَٱجۡتَبَيۡنَٰهُمۡ وَهَدَيۡنَٰهُمۡ إِلَىٰ صِرَٰطٖ مُّسۡتَقِيمٖ ٨٧

88. ಇದು ಅಲ್ಲಾಹನ ಸನ್ಮಾರ್ಗವಾಗಿದೆ. ಅವನು ತನ್ನ ದಾಸರಲ್ಲಿ ಅವನು ಇಚ್ಛಿಸುವವರಿಗೆ ಅದನ್ನು ತೋರಿಸುತ್ತಾನೆ. ಅವರು (ಅಲ್ಲಾಹನೊಡನೆ) ಸಹಭಾಗಿತ್ವ (ಶಿರ್ಕ್) ಮಾಡುತ್ತಿದ್ದರೆ ಅವರು ಮಾಡಿದ ಕರ್ಮಗಳೆಲ್ಲವೂ ನಿಷ್ಫಲವಾಗಿ ಬಿಡುತ್ತಿದ್ದವು.

ذَٰلِكَ هُدَى ٱللَّهِ يَهۡدِي بِهِۦ مَن يَشَآءُ مِنۡ عِبَادِهِۦۚ وَلَوۡ أَشۡرَكُواْ لَحَبِطَ عَنۡهُم مَّا كَانُواْ يَعۡمَلُونَ ٨٨

89. ಇವರಿಗೇ ನಾವು ಗ್ರಂಥ, ವಿವೇಕ ಮತ್ತು ಪ್ರವಾದಿತ್ವಗ-ಳನ್ನು ನೀಡಿದ್ದು. ಇವರು (ಸತ್ಯನಿಷೇಧಿಗಳು) ಅವುಗಳನ್ನು ನಿಷೇಧಿಸಿದರೆ, ಅವುಗಳನ್ನು ನಿಷೇಧಿಸದ ಜನರಿಗೆ ನಾವು ಅದನ್ನು ವಹಿಸಿಕೊಟ್ಟಿದ್ದೇವೆ.

أُوْلَٰٓئِكَ ٱلَّذِينَ ءَاتَيۡنَٰهُمُ ٱلۡكِتَٰبَ وَٱلۡحُكۡمَ وَٱلنُّبُوَّةَۚ فَإِن يَكۡفُرۡ بِهَا هَٰٓؤُلَآءِ فَقَدۡ وَكَّلۡنَا بِهَا قَوۡمٗا لَّيۡسُواْ بِهَا بِكَٰفِرِينَ ٨٩

90. ಇವರಿಗೇ ಅಲ್ಲಾಹು ಸನ್ಮಾರ್ಗವನ್ನು ತೋರಿಸಿದ್ದು. ಆದ್ದರಿಂದ ಅವರ ಸನ್ಮಾರ್ಗವನ್ನು ಅನುಸರಿಸಿರಿ. ಹೇಳಿರಿ: "ಇದಕ್ಕಾಗಿ ನಾನು ನಿಮ್ಮಿಂದ ಪ್ರತಿಫಲ ಕೇಳುವುದಿಲ್ಲ. ಇದು ಸರ್ವಲೋಕದವರಿಗೆ ಒಂದು ಉಪದೇಶ ಮಾತ್ರವಾಗಿದೆ."

أُوْلَٰٓئِكَ ٱلَّذِينَ هَدَى ٱللَّهُۖ فَبِهُدَىٰهُمُ ٱقۡتَدِهۡۗ قُل لَّآ أَسۡـَٔلُكُمۡ عَلَيۡهِ أَجۡرًاۖ إِنۡ هُوَ إِلَّا ذِكۡرَىٰ لِلۡعَٰلَمِينَ ٩٠

91. "ಅಲ್ಲಾಹು ಮನುಷ್ಯನಿಗೆ (ಪ್ರವಾದಿಗೆ) ಏನೂ ಅವತೀರ್ಣಗೊಳಿ-ಸಿಲ್ಲ" ಎಂದು ಅವರು ಹೇಳಿದಾಗ, ಅವರು ಅಲ್ಲಾಹನಿಗೆ ಮಹತ್ವ ನೀಡಬೇಕಾದ ರೀತಿಯಲ್ಲಿ ಮಹತ್ವ ನೀಡಲಿಲ್ಲ. ಕೇಳಿರಿ: "ಜನರಿಗೆ ಬೆಳಕು ಮತ್ತು ಸನ್ಮಾರ್ಗವಾಗಿ ಮೂಸಾ ತಂದ ಗ್ರಂಥವನ್ನು ಅವತೀರ್ಣಗೊಳಿಸಿದ್ದು ಯಾರು? ನೀವು ಅದನ್ನು ಕಾಗದದ ತುಂಡುಗಳಾಗಿ ಮಾಡಿ, ಅದರ ಕೆಲವು ಭಾಗವನ್ನು ಬಹಿರಂಗ-ಪಡಿಸುತ್ತೀರಿ ಮತ್ತು ಹೆಚ್ಚಿನದ್ದನ್ನು ಮುಚ್ಚಿಡುತ್ತೀರಿ. ನಿಮಗೆ ಮತ್ತು ನಿಮ್ಮ ಪೂರ್ವಜರಿಗೆ ಗೊತ್ತಿಲ್ಲದ ಅನೇಕ ಸಂಗತಿಗಳನ್ನು (ಆ ಗ್ರಂಥದ ಮೂಲಕ) ಕಲಿಸಿಕೊಡಲಾಗಿತ್ತು." ಹೇಳಿರಿ: "(ಅದನ್ನು ಅವತೀರ್ಣಗೊಳಿಸಿದ್ದು) ಅಲ್ಲಾಹು." ನಂತರ ಅವರನ್ನು ಅವರ ವ್ಯರ್ಥ ಮಾತುಗಳಲ್ಲಿ ಆಟವಾಡಲು ಬಿಟ್ಟುಬಿಡಿ.

وَمَا قَدَرُواْ ٱللَّهَ حَقَّ قَدۡرِهِۦٓ إِذۡ قَالُواْ مَآ أَنزَلَ ٱللَّهُ عَلَىٰ بَشَرٖ مِّن شَيۡءٖۗ قُلۡ مَنۡ أَنزَلَ ٱلۡكِتَٰبَ ٱلَّذِي جَآءَ بِهِۦ مُوسَىٰ نُورٗا وَهُدٗى لِّلنَّاسِۖ تَجۡعَلُونَهُۥ قَرَاطِيسَ تُبۡدُونَهَا وَتُخۡفُونَ كَثِيرٗاۖ وَعُلِّمۡتُم مَّا لَمۡ تَعۡلَمُوٓاْ أَنتُمۡ وَلَآ ءَابَآؤُكُمۡۖ قُلِ ٱللَّهُۖ ثُمَّ ذَرۡهُمۡ فِي خَوۡضِهِمۡ يَلۡعَبُونَ ٩١

92. ಇದು ನಾವು ಅವತೀರ್ಣಗೊಳಿಸಿದ ಸಮೃದ್ಧಪೂರ್ಣ ಗ್ರಂಥವಾಗಿದೆ. ಇದು ಇದಕ್ಕಿಂತ ಮೊದಲಿನ ಗ್ರಂಥಗಳನ್ನು ದೃಢೀಕರಿಸುತ್ತದೆ. ಉಮ್ಮುಲ್ ಕುರಾ (ಮಕ್ಕಾ) ಮತ್ತು ಅದರ ಆಸುಪಾಸಿನ ಜನರಿಗೆ ನೀವು ಮುನ್ನೆಚ್ಚರಿಕೆ ನೀಡುವುದಕ್ಕಾಗಿ (ಇದನ್ನು ಅವತೀರ್ಣಗೊಳಿಸಲಾಗಿದೆ). ಪರಲೋಕದಲ್ಲಿ ವಿಶ್ವಾಸವಿಡುವವರು ಈ ಗ್ರಂಥದಲ್ಲಿ ವಿಶ್ವಾಸವಿಡುತ್ತಾರೆ. ಅವರು ತಮ್ಮ ನಮಾಝ್‌ಗಳನ್ನು ಸಂರಕ್ಷಿಸುತ್ತಾರೆ.

وَهَٰذَا كِتَٰبٌ أَنزَلۡنَٰهُ مُبَارَكٞ مُّصَدِّقُ ٱلَّذِي
بَيۡنَ يَدَيۡهِ وَلِتُنذِرَ أُمَّ ٱلۡقُرَىٰ وَمَنۡ حَوۡلَهَاۚ
وَٱلَّذِينَ يُؤۡمِنُونَ بِٱلۡأٓخِرَةِ يُؤۡمِنُونَ بِهِۦۖ وَهُمۡ عَلَىٰ
صَلَاتِهِمۡ يُحَافِظُونَ ﴿٩٢﴾

93. ಅಲ್ಲಾಹನ ಮೇಲೆ ಸುಳ್ಳು ಆರೋಪಿಸುವವನಿಗಿಂತ ಅಥವಾ ತನಗೆ ದೇವವಾಣಿ ಅವತೀರ್ಣವಾಗದಿದ್ದರೂ ಅವತೀರ್ಣವಾಗಿದೆಯೆಂದು ಹೇಳುವವನಿಗಿಂತ, ಮತ್ತು ಅಲ್ಲಾಹು ಅವತೀರ್ಣಗೊಳಿಸಿದ್ದನ್ನು ನಾನು ಕೂಡ ಅವತೀರ್ಣಗೊಳಿಸುತ್ತೇನೆ ಎಂದು ಹೇಳುವವನಿಗಿಂತ ದೊಡ್ಡ ಅಕ್ರಮಿ ಯಾರು? ಅಕ್ರಮಿಗಳು ಮರಣ ಯಾತನೆ ಅನುಭವಿಸುವ ಭಯಾನಕ ದೃಶ್ಯವನ್ನು ನೀವೇನಾದರೂ ನೋಡಿರುತ್ತಿದ್ದರೆ! ದೇವದೂತರುಗಳು ಅವರ ಬಳಿಗೆ ತಮ್ಮ ಕೈಗಳನ್ನು ಚಾಚುತ್ತಾ ಹೇಳುತ್ತಾರೆ: "ನಿಮ್ಮ ಆತ್ಮಗಳನ್ನು ಹೊರಹಾಕಿರಿ; ನೀವು ಅಲ್ಲಾಹನ ಮೇಲೆ ಸತ್ಯಕ್ಕೆ ದೂರವಾದುದನ್ನು ಹೇಳಿದ ಕಾರಣ ಮತ್ತು ಅಹಂಕಾರದಿಂದ ಅವನ ವಚನಗಳನ್ನು ನಿಷೇಧಿಸಿದ ಕಾರಣ ಇಂದು ನಿಮಗೆ ಹೀನಾಯ ಶಿಕ್ಷೆ ನೀಡಲಾಗುವುದು."

وَمَنۡ أَظۡلَمُ مِمَّنِ ٱفۡتَرَىٰ عَلَى ٱللَّهِ كَذِبًا أَوۡ قَالَ
أُوحِيَ إِلَيَّ وَلَمۡ يُوحَ إِلَيۡهِ شَيۡءٞ وَمَن قَالَ سَأُنزِلُ
مِثۡلَ مَآ أَنزَلَ ٱللَّهُۗ وَلَوۡ تَرَىٰٓ إِذِ ٱلظَّٰلِمُونَ فِي
غَمَرَٰتِ ٱلۡمَوۡتِ وَٱلۡمَلَٰٓئِكَةُ بَاسِطُوٓاْ أَيۡدِيهِمۡ
أَخۡرِجُوٓاْ أَنفُسَكُمُۖ ٱلۡيَوۡمَ تُجۡزَوۡنَ عَذَابَ ٱلۡهُونِ
بِمَا كُنتُمۡ تَقُولُونَ عَلَى ٱللَّهِ غَيۡرَ ٱلۡحَقِّ وَكُنتُمۡ
عَنۡ ءَايَٰتِهِۦ تَسۡتَكۡبِرُونَ ﴿٩٣﴾

94. (ಅವರೊಡನೆ ಹೇಳಲಾಗುವುದು): "ನಾವು ನಿಮ್ಮನ್ನು ಪ್ರಥಮ ಬಾರಿ ಸೃಷ್ಟಿಸಿದಂತೆ, ನೀವು ಒಬ್ಬೊಬ್ಬರಾಗಿ ನಮ್ಮ ಬಳಿಗೆ ಬಂದಿದ್ದೀರಿ. ನಾವು ನಿಮಗೆ ನೀಡಿದ ಸವಲತ್ತುಗಳನ್ನು ನಿಮ್ಮ ಬೆನ್ನ ಹಿಂದೆ ಬಿಟ್ಟು ಬಂದಿದ್ದೀರಿ. ನೀವು (ಅಲ್ಲಾಹನ) ಸಹಭಾಗಿಗಳೆಂದು ವಾದಿಸುತ್ತಿದ್ದ ನಿಮ್ಮ ಶಿಫಾರಸುಗಾರರನ್ನು ನಾವು ನಿಮ್ಮ ಜೊತೆಗೆ ಕಾಣುತ್ತಿಲ್ಲ. ನಿಮ್ಮ ಆ ಸಂಬಂಧಗಳು ಮುರಿದು ಬಿದ್ದಿವೆ. ನೀವು (ದೇವರುಗಳೆಂದು) ವಾದಿಸುತ್ತಿದ್ದವರೆಲ್ಲರೂ ನಿಮ್ಮನ್ನು ಬಿಟ್ಟು ಕಣ್ಮರೆಯಾಗಿದ್ದಾರೆ."[1]

وَلَقَدۡ جِئۡتُمُونَا فُرَٰدَىٰ كَمَا خَلَقۡنَٰكُمۡ أَوَّلَ
مَرَّةٖ وَتَرَكۡتُم مَّا خَوَّلۡنَٰكُمۡ وَرَآءَ ظُهُورِكُمۡۖ وَمَا
نَرَىٰ مَعَكُمۡ شُفَعَآءَكُمُ ٱلَّذِينَ زَعَمۡتُمۡ أَنَّهُمۡ
فِيكُمۡ شُرَكَٰٓؤُاْۚ لَقَد تَّقَطَّعَ بَيۡنَكُمۡ وَضَلَّ
عَنكُم مَّا كُنتُمۡ تَزۡعُمُونَ ﴿٩٤﴾

95. ನಿಶ್ಚಯವಾಗಿಯೂ ಅಲ್ಲಾಹು ಧಾನ್ಯವನ್ನು ಮತ್ತು ಖರ್ಜೂರದ ಬೀಜವನ್ನು ಸೀಳುತ್ತಾನೆ. ಅವನು ನಿರ್ಜೀವಿಯಿಂದ ಜೀವಿಯನ್ನು ಹೊರತರುತ್ತಾನೆ ಮತ್ತು ಜೀವಿಯಿಂದ ನಿರ್ಜೀವಿಯನ್ನು ಹೊರತರುತ್ತಾನೆ. ಅವನೇ ಅಲ್ಲಾಹು. ಹೀಗಿದ್ದೂ ನೀವು

إِنَّ ٱللَّهَ فَالِقُ ٱلۡحَبِّ وَٱلنَّوَىٰۖ يُخۡرِجُ ٱلۡحَيَّ مِنَ
ٱلۡمَيِّتِ وَمُخۡرِجُ ٱلۡمَيِّتِ مِنَ ٱلۡحَيِّۚ ذَٰلِكُمُ ٱللَّهُۖ
فَأَنَّىٰ تُؤۡفَكُونَ ﴿٩٥﴾

[1] ಅಲ್ಲಾಹನ ಬಳಿ ಶಿಫಾರಸು ಮಾಡುತ್ತಾರೆ ಮತ್ತು ಅಲ್ಲಾಹನಿಗೆ ಸಮೀಪಗೊಳಿಸುತ್ತಾರೆಂಬ ನಂಬಿಕೆಯಿಂದ ಸತ್ಯನಿಷೇಧಿಗಳು ಅನೇಕ ದೇವರುಗಳನ್ನು ಆರಾಧಿಸುತ್ತಿದ್ದರು. ಆದರೆ ಅವರು ಪರಲೋಕಕ್ಕೆ ಬರುವಾಗ ಈ ದೇವರುಗಳೆಲ್ಲರೂ ಕಣ್ಮರೆಯಾಗಿರುತ್ತಾರೆ.

ದಾರಿತಪ್ಪುತ್ತಿರುವುದು ಹೇಗೆ?

96. ಅವನು ಪ್ರಭಾತವನ್ನು ಸೀಳುತ್ತಾನೆ. ಅವನು ರಾತ್ರಿಯನ್ನು ವಿಶ್ರಾಂತಿಯನ್ನಾಗಿ ಮಾಡಿದ್ದಾನೆ ಮತ್ತು ಸೂರ್ಯ-ಚಂದ್ರರನ್ನು ಕಾಲಗಣನೆಗೆ ಆಧಾರವಾಗಿ ಮಾಡಿದ್ದಾನೆ ಇದು ಪ್ರಬಲನು ಮತ್ತು ಸರ್ವಜ್ಞನಾದ ಅಲ್ಲಾಹನ ನಿರ್ಣಯವಾಗಿದೆ.

فَالِقُ ٱلۡإِصۡبَاحِ وَجَعَلَ ٱلَّيۡلَ سَكَنًا وَٱلشَّمۡسَ وَٱلۡقَمَرَ حُسۡبَانًاۚ ذَٰلِكَ تَقۡدِيرُ ٱلۡعَزِيزِ ٱلۡعَلِيمِ ٩٦

97. ನೆಲ ಮತ್ತು ಕಡಲಿನ ಗಾಢಾಂಧಕಾರದಲ್ಲಿ ನೀವು ದಾರಿಯನ್ನು ಕಾಣಲು ಅವನು ನಕ್ಷತ್ರಗಳನ್ನು ಉಂಟು ಮಾಡಿದನು. ತಿಳಿಯುವ ಜನರಿಗಾಗಿ ನಾವು ನಮ್ಮ ದೃಷ್ಟಾಂತಗಳನ್ನು ವಿವರಿಸಿಕೊಟ್ಟಿದ್ದೇವೆ.

وَهُوَ ٱلَّذِي جَعَلَ لَكُمُ ٱلنُّجُومَ لِتَهۡتَدُواْ بِهَا فِي ظُلُمَٰتِ ٱلۡبَرِّ وَٱلۡبَحۡرِۗ قَدۡ فَصَّلۡنَا ٱلۡأٓيَٰتِ لِقَوۡمٖ يَعۡلَمُونَ ٩٧

98. ನಿಮ್ಮನ್ನು ಒಂದೇ ಆತ್ಮದಿಂದ ಸೃಷ್ಟಿಸಿದವನು ಅವನೇ. ನಂತರ ಅವನು ಒಂದು ವಾಸ್ತವ್ಯ ಮತ್ತು ಸಂಗ್ರಹ ಸ್ಥಳವನ್ನು[1] ಮಾಡಿದನು ಅರ್ಥಮಾಡಿಕೊಳ್ಳುವ ಜನರಿಗಾಗಿ ನಾವು ದೃಷ್ಟಾಂತಗಳನ್ನು ವಿವರಿಸಿಕೊಟ್ಟಿದ್ದೇವೆ.

وَهُوَ ٱلَّذِيٓ أَنشَأَكُم مِّن نَّفۡسٖ وَٰحِدَةٖ فَمُسۡتَقَرّٞ وَمُسۡتَوۡدَعٞۗ قَدۡ فَصَّلۡنَا ٱلۡأٓيَٰتِ لِقَوۡمٖ يَفۡقَهُونَ ٩٨

99. ಆಕಾಶದಿಂದ ಮಳೆ ಸುರಿಸುವವನು ಅವನೇ. ನಂತರ ನಾವು ಅದರಿಂದ ಎಲ್ಲಾ ರೀತಿಯ ಬೆಳೆಗಳನ್ನು ಉತ್ಪಾದಿಸಿದೆವು. ನಾವು ಅದರಿಂದ ಹಸಿರು ಸಸ್ಯಗಳನ್ನು ಉತ್ಪಾದಿಸಿದೆವು. ಆ ಸಸ್ಯಗಳಿಂದ ನಾವು ತುಂಬಿ ತುಳುಕುವ ಧಾನ್ಯಗಳನ್ನು ಉತ್ಪಾದಿಸುತ್ತೇವೆ. ಖರ್ಜೂರದ ಮರದಿಂದ ಅಥವಾ ಅದರ ಮೊಗ್ಗುಗಳಿಂದ ತೂಗು ಹಾಕಲಾದ ಗೊಂಚಲುಗಳು ಹೊರಹೊಮ್ಮುತ್ತವೆ. ನಾವು ದ್ರಾಕ್ಷಿ ತೋಟಗಳನ್ನು ಮತ್ತು ಪರಸ್ಪರ ಹೋಲಿಕೆಯಿದ್ದರೂ ವಿಭಿನ್ನವಾಗಿರುವ ಆಲಿವ್ ಮತ್ತು ದಾಳಿಂಬೆಯನ್ನು ಉತ್ಪಾದಿಸಿದೆವು. ಅವು ಕಾಯಿಬಿಡುವಾಗ ಮತ್ತು ಹಣ್ಣಾಗುವಾಗ ಅವುಗಳನ್ನು ನೋಡಿರಿ. ವಿಶ್ವಾಸವಿಡುವ ಜನರಿಗೆ ನಿಶ್ಚಯವಾಗಿಯೂ ಇದರಲ್ಲಿ ದೃಷ್ಟಾಂತಗಳಿವೆ.

وَهُوَ ٱلَّذِيٓ أَنزَلَ مِنَ ٱلسَّمَآءِ مَآءٗ فَأَخۡرَجۡنَا بِهِۦ نَبَاتَ كُلِّ شَيۡءٖ فَأَخۡرَجۡنَا مِنۡهُ خَضِرٗا نُّخۡرِجُ مِنۡهُ حَبّٗا مُّتَرَاكِبٗا وَمِنَ ٱلنَّخۡلِ مِن طَلۡعِهَا قِنۡوَانٞ دَانِيَةٞ وَجَنَّٰتٖ مِّنۡ أَعۡنَابٖ وَٱلزَّيۡتُونَ وَٱلرُّمَّانَ مُشۡتَبِهٗا وَغَيۡرَ مُتَشَٰبِهٍۗ ٱنظُرُوٓاْ إِلَىٰ ثَمَرِهِۦٓ إِذَآ أَثۡمَرَ وَيَنۡعِهِۦٓۚ إِنَّ فِي ذَٰلِكُمۡ لَأٓيَٰتٖ لِّقَوۡمٖ يُؤۡمِنُونَ ٩٩

100. ಅವರು ಜಿನ್ನ್‌ಗಳನ್ನು ಅಲ್ಲಾಹನಿಗೆ ಸಹಭಾಗಿಗಳಾಗಿ ಮಾಡಿದರು. ಆದರೆ ವಾಸ್ತವವಾಗಿ ಅವರನ್ನು ಸೃಷ್ಟಿಸಿದ್ದು ಅವನೇ. ಅವರು ಯಾವುದೇ ಜ್ಞಾನವಿಲ್ಲದೆ ಅಲ್ಲಾಹನಿಗೆ ಗಂಡು ಮತ್ತು ಹೆಣ್ಣುಮಕ್ಕಳಿದ್ದಾರೆಂದು ಆರೋಪಿಸಿದರು. ಅವರ ಈ ವರ್ಣನೆಗಳಿಗಿಂತ ಅಲ್ಲಾಹು ಎಷ್ಟೋ ಪರಿಶುದ್ಧನು ಮತ್ತು ಉನ್ನತನಾಗಿದ್ದಾನೆ.

وَجَعَلُواْ لِلَّهِ شُرَكَآءَ ٱلۡجِنَّ وَخَلَقَهُمۡۖ وَخَرَقُواْ لَهُۥ بَنِينَ وَبَنَٰتِۭ بِغَيۡرِ عِلۡمٖۚ سُبۡحَٰنَهُۥ وَتَعَٰلَىٰ عَمَّا يَصِفُونَ ١٠٠

101. ಅವನು ಪೂರ್ವ ಮಾದರಿಯಿಲ್ಲದೆ ಭೂಮ್ಯಾಕಾಶಗಳನ್ನು

بَدِيعُ ٱلسَّمَٰوَٰتِ وَٱلۡأَرۡضِۖ أَنَّىٰ يَكُونُ لَهُۥ وَلَدٞ

[1] ವಾಸ್ತವ್ಯ ಎಂದರೆ ಗರ್ಭಾಶಯ ಮತ್ತು ಸಂಗ್ರಹ ಸ್ಥಳವೆಂದರೆ ಪುರುಷರ ಬೆನ್ನೆಲುಬು.

ಸೃಷ್ಟಿಸಿದವನು. ಅವನಿಗೆ ಹೆಂಡತಿಯೇ ಇಲ್ಲದಿರುವಾಗ ಮಕ್ಕಳಿರುವುದು ಹೇಗೆ? ಅವನು ಎಲ್ಲಾ ವಸ್ತುಗಳನ್ನು ಸೃಷ್ಟಿಸಿದನು. ಅವನು ಎಲ್ಲಾ ವಿಷಯಗಳನ್ನು ತಿಳಿದವನಾಗಿದ್ದಾನೆ.

وَلَمۡ تَكُن لَّهُۥ صَٰحِبَةٞۖ وَخَلَقَ كُلَّ شَيۡءٖۖ وَهُوَ بِكُلِّ شَيۡءٍ عَلِيمٞ ١٠١

102. ಅವನೇ ನಿಮ್ಮ ಪರಿಪಾಲಕನಾದ ಅಲ್ಲಾಹು. ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ಅವನು ಎಲ್ಲಾ ವಸ್ತುಗಳ ಸೃಷ್ಟಿಕರ್ತನಾಗಿದ್ದಾನೆ. ಆದ್ದರಿಂದ ಅವನನ್ನು ಮಾತ್ರ ಆರಾಧಿಸಿರಿ. ಅವನು ಎಲ್ಲಾ ವಸ್ತುಗಳ ಮೇಲ್ವಿಚಾರಕನಾಗಿದ್ದಾನೆ.

ذَٰلِكُمُ ٱللَّهُ رَبُّكُمۡۖ لَآ إِلَٰهَ إِلَّا هُوَۖ خَٰلِقُ كُلِّ شَيۡءٖ فَٱعۡبُدُوهُۚ وَهُوَ عَلَىٰ كُلِّ شَيۡءٖ وَكِيلٞ ١٠٢

103. ದೃಷ್ಟಿಗಳು ಅವನನ್ನು ತಲುಪುವುದಿಲ್ಲ. ಆದರೆ ಅವನು ದೃಷ್ಟಿಗಳನ್ನು ತಲುಪುತ್ತಾನೆ.[1] ಅವನು ಸೂಕ್ಷ್ಮಗ್ರಾಹಿ ಮತ್ತು ಸೂಕ್ಷ್ಮಜ್ಞಾನಿಯಾಗಿದ್ದಾನೆ.

لَّا تُدۡرِكُهُ ٱلۡأَبۡصَٰرُ وَهُوَ يُدۡرِكُ ٱلۡأَبۡصَٰرَۖ وَهُوَ ٱللَّطِيفُ ٱلۡخَبِيرُ ١٠٣

104. ನಿಮಗೆ ನಿಮ್ಮ ಪರಿಪಾಲಕನಿಂದ ಕಣ್ತೆರೆಸುವಂತಹ ಪುರಾವೆಗಳು ಬಂದಿವೆ. ಆದ್ದರಿಂದ ಯಾರು ಅದನ್ನು ನೋಡುತ್ತಾನೋ ಅದರ ಒಳಿತು ಅವನಿಗೇ ಆಗಿದೆ. ಯಾರು ಕುರುಡನಾಗುತ್ತಾನೋ ಅದರ ದೋಷವು ಅವನಿಗೇ ಆಗಿದೆ. (ಹೇಳಿರಿ): "ನಾನು ನಿಮ್ಮ ಕಾವಲುಗಾರನಲ್ಲ."

قَدۡ جَآءَكُم بَصَآئِرُ مِن رَّبِّكُمۡۖ فَمَنۡ أَبۡصَرَ فَلِنَفۡسِهِۦۖ وَمَنۡ عَمِيَ فَعَلَيۡهَاۚ وَمَآ أَنَا۠ عَلَيۡكُم بِحَفِيظٖ ١٠٤

105. ಈ ರೀತಿ ನಾವು ನಾನಾ ವಿಧಗಳಲ್ಲಿ ವಚನಗಳನ್ನು ವಿವರಿಸಿಕೊಡುತ್ತೇವೆ. "ನೀವು (ಯಹೂದಿ-ಕ್ರೈಸ್ತರಿಂದ) ಕಲಿತು ಬಂದಿದ್ದೀರಿ" ಎಂದು ಸತ್ಯನಿಷೇಧಿಗಳು ಹೇಳುವುದಕ್ಕಾಗಿ ಮತ್ತು ತಿಳುವಳಿಕೆಯಿರುವ ಜನರಿಗೆ ಇದನ್ನು ವಿವರಿಸಿಕೊಡುವುದಕ್ಕಾಗಿ.[2]

وَكَذَٰلِكَ نُصَرِّفُ ٱلۡأٓيَٰتِ وَلِيَقُولُواْ دَرَسۡتَ وَلِنُبَيِّنَهُۥ لِقَوۡمٖ يَعۡلَمُونَ ١٠٥

106. ನಿಮಗೆ ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಅವತೀರ್ಣವಾದ ಸಂದೇಶವನ್ನು ಹಿಂಬಾಲಿಸಿರಿ. ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ಬಹುದೇವಾರಾಧಕರಿಂದ ವಿಮುಖರಾಗಿರಿ.

ٱتَّبِعۡ مَآ أُوحِيَ إِلَيۡكَ مِن رَّبِّكَۖ لَآ إِلَٰهَ إِلَّا هُوَۖ وَأَعۡرِضۡ عَنِ ٱلۡمُشۡرِكِينَ ١٠٦

107. ಅಲ್ಲಾಹು ಇಚ್ಛಿಸುತ್ತಿದ್ದರೆ ಅವರು ಸಹಭಾಗಿತ್ವ (ಶಿರ್ಕ್) ಮಾಡುತ್ತಿರಲಿಲ್ಲ. ನಾವು ನಿಮ್ಮನ್ನು ಅವರಿಗೆ ಕಾವಲುಗಾರನಾಗಿ ಮಾಡಿಲ್ಲ. ನೀವು ಅವರ ಮೇಲ್ನೋಟ ವಹಿಸಬೇಕಾದವರೂ ಅಲ್ಲ.

وَلَوۡ شَآءَ ٱللَّهُ مَآ أَشۡرَكُواْۗ وَمَا جَعَلۡنَٰكَ عَلَيۡهِمۡ حَفِيظٗاۖ وَمَآ أَنتَ عَلَيۡهِم بِوَكِيلٖ ١٠٧

108. ಅವರು ಅಲ್ಲಾಹನನ್ನು ಬಿಟ್ಟು ಕರೆದು ಪ್ರಾರ್ಥಿಸುವ ಆ

وَلَا تَسُبُّواْ ٱلَّذِينَ يَدۡعُونَ مِن دُونِ ٱللَّهِ

[1] ಭೂಲೋಕದಲ್ಲಿ ಯಾರಿಗೂ ಅಲ್ಲಾಹನನ್ನು ನೋಡಲು ಸಾಧ್ಯವಿಲ್ಲ. ಆದರೆ ಪರಲೋಕದಲ್ಲಿ ಸತ್ಯವಿಶ್ವಾಸಿಗಳು ಅಲ್ಲಾಹನನ್ನು ನೋಡುತ್ತಾರೆ.

[2] ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಯಹೂದಿ-ಕ್ರೈಸ್ತರಿಂದ ಕಲಿತು ಬಂದು ಪ್ರವಚನ ಮಾಡುತ್ತಾರೆಂದು ಸತ್ಯನಿಷೇಧಿಗಳು ಆರೋಪಿಸುತ್ತಿದ್ದರು.

ದೇವರುಗಳನ್ನು ದೂಷಿಸಬೇಡಿ. ಇದರಿಂದ ಅವರು ತಿಳುವಳಿಕೆಯಿಲ್ಲದೆ ದ್ವೇಷದಿಂದ ಅಲ್ಲಾಹನನ್ನು ದೂಷಿಸಬಹುದು. ಈ ರೀತಿ ನಾವು ಪ್ರತಿಯೊಂದು ಸಮುದಾಯದವರಿಗೂ ಅವರ ಕರ್ಮಗಳನ್ನು ಅಲಂಕರಿಸಿ ತೋರಿಸಿದ್ದೇವೆ. ನಂತರ ಅವರನ್ನು ಅವರ ಪರಿಪಾಲಕನ ಬಳಿಗೆ ಮರಳಿಸಲಾಗುವುದು. ಆಗ ಅವರು ಮಾಡುತ್ತಿದ್ದ ಕರ್ಮಗಳ ಬಗ್ಗೆ ಅವನು ಅವರಿಗೆ ತಿಳಿಸಿಕೊಡುವನು.

فَيَسُبُّوا۟ ٱللَّهَ عَدْوًۢا بِغَيْرِ عِلْمٍ ۗ كَذَٰلِكَ زَيَّنَّا
لِكُلِّ أُمَّةٍ عَمَلَهُمْ ثُمَّ إِلَىٰ رَبِّهِم مَّرْجِعُهُمْ
فَيُنَبِّئُهُم بِمَا كَانُوا۟ يَعْمَلُونَ ﴿١٠٨﴾

---

109. ಅವರಿಗೆ ಒಂದು ದೃಷ್ಟಾಂತವು ಬಂದರೆ ಅವರು ಅದರಲ್ಲಿ ಖಂಡಿತ ವಿಶ್ವಾಸವಿಡುತ್ತಾರೆಂದು ಅವರು ಅಲ್ಲಾಹನ ಮೇಲೆ ಪ್ರಬಲವಾಗಿ ಆಣೆ ಮಾಡುತ್ತಾ ಹೇಳಿದರು. ಹೇಳಿರಿ: “ದೃಷ್ಟಾಂತಗಳು ಅಲ್ಲಾಹನ ಬಳಿ ಮಾತ್ರವಿದೆ.” ನಿಮಗೇನು ಗೊತ್ತು? ಅದು ಬಂದರೂ ಕೂಡ ಅವರು ವಿಶ್ವಾಸವಿಡಲಾರರು.

وَأَقْسَمُوا۟ بِٱللَّهِ جَهْدَ أَيْمَـٰنِهِمْ لَئِن جَآءَتْهُمْ
ءَايَةٌ لَّيُؤْمِنُنَّ بِهَا ۚ قُلْ إِنَّمَا ٱلْـَٔايَـٰتُ عِندَ ٱللَّهِ ۖ
وَمَا يُشْعِرُكُمْ أَنَّهَآ إِذَا جَآءَتْ لَا يُؤْمِنُونَ ﴿١٠٩﴾

---

110. ಅವರು ಇದರಲ್ಲಿ (ಈ ಕುರ್ಆನ್‌ನಲ್ಲಿ) ಪ್ರಥಮ ಬಾರಿ ವಿಶ್ವಾಸವಿಡದಂತೆಯೇ (ಈಗಲೂ) ನಾವು ಅವರ ಹೃದಯಗಳನ್ನು ಮತ್ತು ಕಣ್ಣುಗಳನ್ನು ತಿರುಗಿಸಿಬಿಡುವೆವು. ಅವರು ಅವರ ಅತಿರೇಕಗಳಲ್ಲಿ ಅಂಧವಾಗಿ ವಿಹರಿಸುವಂತೆ ನಾವು ಅವರನ್ನು ಬಿಟ್ಟುಬಿಡುವೆವು.

وَنُقَلِّبُ أَفْـِٔدَتَهُمْ وَأَبْصَـٰرَهُمْ كَمَا لَمْ
يُؤْمِنُوا۟ بِهِۦٓ أَوَّلَ مَرَّةٍ وَنَذَرُهُمْ فِى طُغْيَـٰنِهِمْ
يَعْمَهُونَ ﴿١١٠﴾

---

111. ನಾವು ಅವರ ಬಳಿಗೆ ದೇವದೂತರುಗಳನ್ನು ಇಳಿಸಿದರೂ, ಸತ್ತವರು (ಎದ್ದು ಬಂದು) ಅವರೊಡನೆ ಮಾತನಾಡಿದರೂ, ನಾವು ಎಲ್ಲಾ ವಸ್ತುಗಳನ್ನು ಅವರ ಮುಂದೆ ಒಟ್ಟುಗೂಡಿಸಿದರೂ ಅವರು ವಿಶ್ವಾಸವಿಡುವುದಿಲ್ಲ. ಅಲ್ಲಾಹು ಇಚ್ಛಿಸಿದರೆ ಹೊರತು. ಆದರೆ ಅವರಲ್ಲಿ ಹೆಚ್ಚಿನವರು ಅವಿವೇಕಿಗಳಾಗಿದ್ದಾರೆ.

وَلَوْ أَنَّنَا نَزَّلْنَآ إِلَيْهِمُ ٱلْمَلَـٰٓئِكَةَ وَكَلَّمَهُمُ ٱلْمَوْتَىٰ
وَحَشَرْنَا عَلَيْهِمْ كُلَّ شَىْءٍ قُبُلًا مَّا كَانُوا۟
لِيُؤْمِنُوٓا۟ إِلَّآ أَن يَشَآءَ ٱللَّهُ وَلَـٰكِنَّ أَكْثَرَهُمْ
يَجْهَلُونَ ﴿١١١﴾

---

112. ಈ ರೀತಿ ನಾವು ಪ್ರತಿಯೊಬ್ಬ ಸಂದೇಶವಾಹಕರಿಗೂ ಮನುಷ್ಯರಲ್ಲಿ ಮತ್ತು ಜಿನ್ನ್‌ಗಳಲ್ಲಿ ಸೇರಿದ ಶೈತಾನರನ್ನು ಶತ್ರುಗಳನ್ನಾಗಿ ಮಾಡಿದ್ದೇವೆ. ಅವರು ವಂಚನಾತ್ಮಕವಾದ ಆಕರ್ಷಕ ಮಾತುಗಳನ್ನು ಪರಸ್ಪರ ದುರ್ಬೋಧನೆ ಮಾಡುತ್ತಾರೆ. ನಿಮ್ಮ ಪರಿಪಾಲಕನು (ಅಲ್ಲಾಹು) ಇಚ್ಛಿಸಿದ್ದರೆ ಅವರು ಹಾಗೆ ಮಾಡುತ್ತಿರಲಿಲ್ಲ. ಆದ್ದರಿಂದ ಅವರನ್ನು ಅವರು ಆರೋಪಿಸುತ್ತಿರುವ ವಿಷಯಗಳೊಂದಿಗೆ ಬಿಟ್ಟುಬಿಡಿ.

وَكَذَٰلِكَ جَعَلْنَا لِكُلِّ نَبِىٍّ عَدُوًّا شَيَـٰطِينَ
ٱلْإِنسِ وَٱلْجِنِّ يُوحِى بَعْضُهُمْ إِلَىٰ بَعْضٍ
زُخْرُفَ ٱلْقَوْلِ غُرُورًا ۚ وَلَوْ شَآءَ رَبُّكَ مَا فَعَلُوهُ ۖ
فَذَرْهُمْ وَمَا يَفْتَرُونَ ﴿١١٢﴾

---

113. ಪರಲೋಕದಲ್ಲಿ ವಿಶ್ವಾಸವಿಡದವರ ಹೃದಯಗಳು ಅದರ (ಅವರ ಮಾತುಗಳ) ಕಡೆಗೆ ಆಕರ್ಷಿತವಾಗುವುದಕ್ಕಾಗಿ, ಅವರು ಅದರಲ್ಲಿ ಸಂತೃಪ್ತರಾಗುವುದಕ್ಕಾಗಿ ಮತ್ತು ಅವರು ಮಾಡುವ ಪಾಪಗಳೆಲ್ಲವನ್ನೂ ಮಾಡುವುದಕ್ಕಾಗಿ (ಅವರು ಹಾಗೆ ಮಾಡುತ್ತಿದ್ದಾರೆ).

وَلِتَصْغَىٰٓ إِلَيْهِ أَفْـِٔدَةُ ٱلَّذِينَ لَا يُؤْمِنُونَ بِٱلْـَٔاخِرَةِ
وَلِيَرْضَوْهُ وَلِيَقْتَرِفُوا۟ مَا هُم مُّقْتَرِفُونَ ﴿١١٣﴾

114. ಈ ವಿವರಣಾತ್ಮಕ ಗ್ರಂಥವನ್ನು ನಿಮಗೆ ಅವತೀರ್ಣಗೊಳಿಸಿದ್ದು ಅಲ್ಲಾಹನಾಗಿರುವಾಗ ನಾನು ಅವನ ಹೊರತಾದವರನ್ನು ತೀರ್ಪುಗಾರರನ್ನಾಗಿ ಹುಡುಕಬೇಕೇ? ನಾವು ಯಾರಿಗೆ ಗ್ರಂಥ ನೀಡಿದ್ದೇವೆಯೋ ಅವರೆಲ್ಲರೂ ಇದು ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಸತ್ಯ ಸಹಿತ ಅವತೀರ್ಣವಾದ ಗ್ರಂಥವೆಂದು ತಿಳಿದಿದ್ದಾರೆ. ಆದ್ದರಿಂದ ನೀವು ಸಂಶಯಪಡುವವರಲ್ಲಿ ಸೇರಬೇಡಿ.

أَفَغَيْرَ ٱللَّهِ أَبْتَغِى حَكَمًا وَهُوَ ٱلَّذِىٓ أَنزَلَ إِلَيْكُمُ ٱلْكِتَٰبَ مُفَصَّلًا ۚ وَٱلَّذِينَ ءَاتَيْنَٰهُمُ ٱلْكِتَٰبَ يَعْلَمُونَ أَنَّهُۥ مُنَزَّلٌ مِّن رَّبِّكَ بِٱلْحَقِّ ۖ فَلَا تَكُونَنَّ مِنَ ٱلْمُمْتَرِينَ ﴿١١٤﴾

115. ನಿಮ್ಮ ಪರಿಪಾಲಕನ (ಅಲ್ಲಾಹನ) ವಚನವು ಸತ್ಯದಲ್ಲಿ ಮತ್ತು ನ್ಯಾಯದಲ್ಲಿ ಪರಿಪೂರ್ಣವಾಗಿದೆ. ಅವನ ವಚನಗಳನ್ನು ಬದಲಾಯಿಸುವವರು ಯಾರೂ ಇಲ್ಲ. ಅವನು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

وَتَمَّتْ كَلِمَتُ رَبِّكَ صِدْقًا وَعَدْلًا ۚ لَّا مُبَدِّلَ لِكَلِمَٰتِهِۦ ۚ وَهُوَ ٱلسَّمِيعُ ٱلْعَلِيمُ ﴿١١٥﴾

116. ನೀವು ಭೂಮಿಯಲ್ಲಿರುವ ಬಹುಸಂಖ್ಯಾತರನ್ನು ಅನುಸರಿಸಿದರೆ ಅವರು ನಿಮ್ಮನ್ನು ಅಲ್ಲಾಹನ ಮಾರ್ಗದಿಂದ ತಪ್ಪಿಸುತ್ತಾರೆ. ಅವರು ಕೇವಲ ಊಹಾ-ಪೋಹಗಳನ್ನು ಮಾತ್ರ ಅನುಸರಿಸುತ್ತಾರೆ. ಅವರು ಕೇವಲ ಸುಳ್ಳನ್ನು ಮಾತ್ರ ಹೇಳುತ್ತಾರೆ.

وَإِن تُطِعْ أَكْثَرَ مَن فِى ٱلْأَرْضِ يُضِلُّوكَ عَن سَبِيلِ ٱللَّهِ ۚ إِن يَتَّبِعُونَ إِلَّا ٱلظَّنَّ وَإِنْ هُمْ إِلَّا يَخْرُصُونَ ﴿١١٦﴾

117. ತನ್ನ ಮಾರ್ಗದಿಂದ ತಪ್ಪಿಹೋದವನು ಯಾರೆಂದು ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನಿಗೆ (ಅಲ್ಲಾಹನಿಗೆ) ತಿಳಿದಿದೆ. ಸನ್ಮಾರ್ಗದಲ್ಲಿರುವವರು ಯಾರೆಂಬ ಬಗ್ಗೆಯೂ ಅವನಿಗೆ ತಿಳಿದಿದೆ.

إِنَّ رَبَّكَ هُوَ أَعْلَمُ مَن يَضِلُّ عَن سَبِيلِهِۦ ۖ وَهُوَ أَعْلَمُ بِٱلْمُهْتَدِينَ ﴿١١٧﴾

118. ಆದ್ದರಿಂದ ಅಲ್ಲಾಹನ ಹೆಸರನ್ನು ಉಚ್ಚರಿಸಿ (ಕೊಯ್ಯು) ಲಾದ ಪ್ರಾಣಿಗಳನ್ನು ತಿನ್ನಿರಿ. ನೀವು ಅವನ ವಚನಗಳಲ್ಲಿ ವಿಶ್ವಾಸವಿಡುವವರಾಗಿದ್ದರೆ!

فَكُلُوا۟ مِمَّا ذُكِرَ ٱسْمُ ٱللَّهِ عَلَيْهِ إِن كُنتُم بِـَٔايَٰتِهِۦ مُؤْمِنِينَ ﴿١١٨﴾

119. ಅಲ್ಲಾಹನ ಹೆಸರನ್ನು ಉಚ್ಚರಿಸಿ (ಕೊಯ್ಯು) ಲಾದ ಪ್ರಾಣಿಯನ್ನು ತಿನ್ನದಿರಲು ನಿಮಗೇನಾಗಿದೆ? ನಿಮಗೆ ನಿಷೇಧಿಸಲಾದ ವಸ್ತುಗಳನ್ನು ಅವನು ಈಗಾಗಲೇ ನಿಮಗೆ ವಿವರಿಸಿಕೊಟ್ಟಿದ್ದಾನೆ. ಆದರೆ ಅನಿವಾರ್ಯ ಸಂದರ್ಭಗಳಲ್ಲಿ ಅದು ಕೂಡ ನಿಮಗೆ ಅನುಮತಿಸಲಾಗಿದೆ. ಹೆಚ್ಚಿನ ಜನರು ಯಾವುದೇ ಜ್ಞಾನವಿಲ್ಲದೆ ತಮ್ಮ ಸ್ವೇಚ್ಛೆಗಳನ್ನು ಹಿಂಬಾಲಿಸುತ್ತಾ ಜನರನ್ನು ದಾರಿತಪ್ಪಿಸುತ್ತಿದ್ದಾರೆ. ನಿಶ್ಚಯವಾಗಿಯೂ ಅತಿರೇಕಿಗಳ ಬಗ್ಗೆ ನಿಮ್ಮ ಪರಿಪಾಲಕನಿಗೆ (ಅಲ್ಲಾಹನಿಗೆ) ಬಹಳ ಚೆನ್ನಾಗಿ ತಿಳಿದಿದೆ.

وَمَا لَكُمْ أَلَّا تَأْكُلُوا۟ مِمَّا ذُكِرَ ٱسْمُ ٱللَّهِ عَلَيْهِ وَقَدْ فَصَّلَ لَكُم مَّا حَرَّمَ عَلَيْكُمْ إِلَّا مَا ٱضْطُرِرْتُمْ إِلَيْهِ ۗ وَإِنَّ كَثِيرًا لَّيُضِلُّونَ بِأَهْوَآئِهِم بِغَيْرِ عِلْمٍ ۗ إِنَّ رَبَّكَ هُوَ أَعْلَمُ بِٱلْمُعْتَدِينَ ﴿١١٩﴾

120. ಬಹಿರಂಗವಾಗಿ ಮಾಡುವ ಪಾಪಗಳನ್ನು ಮತ್ತು ರಹಸ್ಯವಾಗಿ

وَذَرُوا۟ ظَٰهِرَ ٱلْإِثْمِ وَبَاطِنَهُۥٓ ۚ إِنَّ ٱلَّذِينَ

يَكۡسِبُونَ ٱلۡإِثۡمَ سَيُجۡزَوۡنَ بِمَا كَانُواْ يَقۡتَرِفُونَ ١٢٠

ಮಾಡುವ ಪಾಪಗಳನ್ನು ಬಿಟ್ಟುಬಿಡಿ. ನಿಶ್ಚಯವಾಗಿಯೂ ಪಾಪ ಮಾಡುವವರು ಯಾರೋ—ಅವರು ಮಾಡಿದ ಪಾಪಕ್ಕೆ ತಕ್ಕ ಪ್ರತಿಫಲವನ್ನು ನೀಡಲಾಗುವುದು.

---

وَلَا تَأۡكُلُواْ مِمَّا لَمۡ يُذۡكَرِ ٱسۡمُ ٱللَّهِ عَلَيۡهِ وَإِنَّهُۥ لَفِسۡقٞۗ وَإِنَّ ٱلشَّيَٰطِينَ لَيُوحُونَ إِلَىٰٓ أَوۡلِيَآئِهِمۡ لِيُجَٰدِلُوكُمۡۖ وَإِنۡ أَطَعۡتُمُوهُمۡ إِنَّكُمۡ لَمُشۡرِكُونَ ١٢١

121. ಅಲ್ಲಾಹನ ಹೆಸರನ್ನು ಉಚ್ಚರಿಸದಿರುವ ಪ್ರಾಣಿಗಳನ್ನು ತಿನ್ನಬೇಡಿ. ನಿಶ್ಚಯವಾಗಿಯೂ ಅದು ಅವಿಧೇಯತೆಯಾಗಿದೆ. ನಿಮ್ಮೊಂದಿಗೆ ತರ್ಕಿಸಲು ನಿಶ್ಚಯವಾಗಿಯೂ ಶೈತಾನರು ತಮ್ಮ ಮಿತ್ರರಿಗೆ ದುರ್ಬೋಧನೆ ಮಾಡುತ್ತಾರೆ. ನೀವೇನಾದರೂ ಅವರನ್ನು ಅನುಸರಿಸಿದರೆ ನಿಶ್ಚಯವಾಗಿಯೂ ನೀವು ಸಹಭಾಗಿತ್ವ (ಶಿರ್ಕ್) ಮಾಡಿದವರಾಗುವಿರಿ.

---

أَوَمَن كَانَ مَيۡتٗا فَأَحۡيَيۡنَٰهُ وَجَعَلۡنَا لَهُۥ نُورٗا يَمۡشِي بِهِۦ فِي ٱلنَّاسِ كَمَن مَّثَلُهُۥ فِي ٱلظُّلُمَٰتِ لَيۡسَ بِخَارِجٖ مِّنۡهَاۚ كَذَٰلِكَ زُيِّنَ لِلۡكَٰفِرِينَ مَا كَانُواْ يَعۡمَلُونَ ١٢٢

122. ನಿರ್ಜೀವ ಸ್ಥಿತಿಯಲ್ಲಿದ್ದ ಒಬ್ಬ ವ್ಯಕ್ತಿಗೆ ನಾವು ಜೀವವನ್ನು ನೀಡಿ, ಅವನಿಗೆ ಒಂದು ಬೆಳಕನ್ನು ಸಹ ದಯಪಾಲಿಸಿದೆವು. ಅವನು ಆ ಬೆಳಕಿನೊಂದಿಗೆ ಜನರ ಮಧ್ಯೆ ಓಡಾಡುತ್ತಾನೆ. ಇಂತಹವನು ಹೊರಬರಲಾಗದ ಸ್ಥಿತಿಯಲ್ಲಿ ಗಾಢಾಂಧಕಾರಗಳಲ್ಲಿ ಬಿದ್ದಿರುವ ವ್ಯಕ್ತಿಯಂತಾಗುವನೇ? ಈ ರೀತಿ ಸತ್ಯನಿಷೇಧಿಗಳಿಗೆ ಅವರು ಮಾಡುತ್ತಿರುವ ದುಷ್ಕರ್ಮಗಳನ್ನು ಅಲಂಕರಿಸಿಕೊಡಲಾಗಿದೆ.

---

وَكَذَٰلِكَ جَعَلۡنَا فِي كُلِّ قَرۡيَةٍ أَكَٰبِرَ مُجۡرِمِيهَا لِيَمۡكُرُواْ فِيهَاۖ وَمَا يَمۡكُرُونَ إِلَّا بِأَنفُسِهِمۡ وَمَا يَشۡعُرُونَ ١٢٣

123. ಇದೇ ರೀತಿ ನಾವು ಪ್ರತಿಯೊಂದು ಊರಿನಲ್ಲೂ ಅಲ್ಲಿನ ಅಪರಾಧಿಗಳ ಮುಖಂಡರನ್ನು ಪಿತೂರಿಗಳಲ್ಲಿ ಮಗ್ನರಾಗುವಂತೆ ಮಾಡಿದ್ದೇವೆ. ವಾಸ್ತವದಲ್ಲಿ, ಅವರು ಅವರ ವಿರುದ್ಧವೇ ಪಿತೂರಿ ಮಾಡುತ್ತಿದ್ದಾರೆ. ಆದರೆ, ಅವರು ಅದನ್ನು ಅರಿಯುವುದಿಲ್ಲ.[1]

---

وَإِذَا جَآءَتۡهُمۡ ءَايَةٞ قَالُواْ لَن نُّؤۡمِنَ حَتَّىٰ نُؤۡتَىٰ مِثۡلَ مَآ أُوتِيَ رُسُلُ ٱللَّهِۘ ٱللَّهُ أَعۡلَمُ حَيۡثُ يَجۡعَلُ رِسَالَتَهُۥۗ سَيُصِيبُ ٱلَّذِينَ أَجۡرَمُواْ صَغَارٌ عِندَ ٱللَّهِ وَعَذَابٞ شَدِيدُۢ بِمَا كَانُواْ يَمۡكُرُونَ ١٢٤

124. ಯಾವುದೇ ದೃಷ್ಟಾಂತವು ಅವರ ಬಳಿಗೆ ಬಂದಾಗ, "ಅಲ್ಲಾಹನ ಸಂದೇಶವಾಹಕರುಗಳಿಗೆ ನೀಡಲಾದ ವಸ್ತುವನ್ನು ನಮಗೂ ನೀಡಲಾಗುವ ತನಕ ನಾವು ಖಂಡಿತ ವಿಶ್ವಾಸವಿಡುವುದಿಲ್ಲ" ಎಂದು ಅವರು ಹೇಳುತ್ತಾರೆ. ಆದರೆ ತನ್ನ ಸಂದೇಶವಾಹಕತ್ವವನ್ನು ಎಲ್ಲಿ ಸ್ಥಾಪಿಸಬೇಕೆಂದು ಅಲ್ಲಾಹನಿಗೆ ಬಹಳ ಚೆನ್ನಾಗಿ ತಿಳಿದಿದೆ. ಅಪರಾಧಿಗಳಿಗೆ, ಅವರ ಮಾಡುವ ಪಿತೂರಿಗಳಿಂದಾಗಿ ಅಲ್ಲಾಹನ ಬಳಿ ಅಪಮಾನ ಮತ್ತು ಕಠಿಣವಾದ ಶಿಕ್ಷೆಯನ್ನು ಸದ್ಯವೇ ಅನುಭವಿಸಬೇಕಾಗಿ ಬರುವುದು.

---

فَمَن يُرِدِ ٱللَّهُ أَن يَهۡدِيَهُۥ يَشۡرَحۡ صَدۡرَهُۥ لِلۡإِسۡلَٰمِۖ وَمَن يُرِدۡ أَن يُضِلَّهُۥ يَجۡعَلۡ صَدۡرَهُۥ ضَيِّقًا حَرَجٗا كَأَنَّمَا يَصَّعَّدُ فِي ٱلسَّمَآءِۚ كَذَٰلِكَ

125. ಯಾರಿಗೆ ಸನ್ಮಾರ್ಗ ತೋರಿಸಬೇಕೆಂದು ಅಲ್ಲಾಹು ಬಯಸುತ್ತಾನೋ ಅವನ ಹೃದಯವನ್ನು ಇಸ್ಲಾಮಿಗಾಗಿ ತೆರೆದುಕೊಡುತ್ತಾನೆ. ಯಾರನ್ನು ದಾರಿತಪ್ಪಿಸಬೇಕೆಂದು ಅಲ್ಲಾಹು ಬಯಸುತ್ತಾನೋ ಅವನ ಹೃದಯವನ್ನು ಬಿಗಿಯಾಗಿ

[1] ಅಂದರೆ ಅವರು ಮಾಡುವ ಎಲ್ಲಾ ಪಿತೂರಿಗಳ ದುಷ್ಪರಿಣಾಮಗಳನ್ನು ಸ್ವತಃ ಅವರೇ ಅನುಭವಿಸುವರು.

ಮತ್ತು ಇಕ್ಕಟ್ಟಾಗಿ ಮಾಡುತ್ತಾನೆ. ಅವನು ಆಕಾಶಕ್ಕೆ ಏರಿ ಹೋಗುತ್ತಿದ್ದಾನೋ ಎಂಬಂತೆ! ಈ ರೀತಿ ಅಲ್ಲಾಹು ವಿಶ್ವಾಸ-ವಿಡದವರ ಮೇಲೆ ಶಿಕ್ಷೆಯನ್ನು ಹಾಕುತ್ತಾನೆ.

يَجۡعَلُ ٱللَّهُ ٱلرِّجۡسَ عَلَى ٱلَّذِينَ لَا يُؤۡمِنُونَ ١٢٥

---

126. ಇದು ನಿಮ್ಮ ಪರಿಪಾಲಕನ (ಅಲ್ಲಾಹನ) ನೇರಮಾರ್ಗವಾಗಿದೆ. ಉಪದೇಶ ಸ್ವೀಕರಿಸುವ ಜನರಿಗೆ ನಾವು ಈಗಾಗಲೇ ದೃಷ್ಟಾಂತಗಳನ್ನು ವಿವರಿಸಿಕೊಟ್ಟಿದ್ದೇವೆ.

وَهَٰذَا صِرَٰطُ رَبِّكَ مُسۡتَقِيمٗاۗ قَدۡ فَصَّلۡنَا ٱلۡأٓيَٰتِ لِقَوۡمٖ يَذَّكَّرُونَ ١٢٦

---

127. ಅವರಿಗೆ ಅವರ ಪರಿಪಾಲಕನ (ಅಲ್ಲಾಹನ) ಬಳಿ ಶಾಂತಿಯ ಭವನವಿದೆ (ಸ್ವರ್ಗವಿದೆ). ಅವರು ಮಾಡುತ್ತಿರುವ ಕರ್ಮಗಳ ಕಾರಣದಿಂದ ಅವನು ಅವರ ಮಿತ್ರನಾಗಿದ್ದಾನೆ.

لَهُمۡ دَارُ ٱلسَّلَٰمِ عِندَ رَبِّهِمۡۖ وَهُوَ وَلِيُّهُم بِمَا كَانُواْ يَعۡمَلُونَ ١٢٧

---

128. ಅವನು ಅವರೆಲ್ಲರನ್ನೂ ಒಟ್ಟುಗೂಡಿಸುವ ದಿನ. (ಅವನು ಹೇಳುವನು): "ಓ ಜಿನ್ನ್‌ಗಳೇ! ನೀವು ಮನುಷ್ಯರಲ್ಲಿ ಬಹುಸಂ-ಖ್ಯಾತರನ್ನು ದಾರಿ ತಪ್ಪಿಸಿದ್ದೀರಿ." ಮನುಷ್ಯರಲ್ಲಿ ಸೇರಿದ ಅವರ ಆಪ್ತಮಿತ್ರರು ಹೇಳುವರು: "ಓ ನಮ್ಮ ಪರಿಪಾಲಕನೇ! ನಮ್ಮಲ್ಲಿ ಕೆಲವರು ಇತರ ಕೆಲವರಿಂದ ಪ್ರಯೋಜನ ಪಡೆದರು. ಹೀಗೆ ನೀನು ನಮಗೆ ನಿಶ್ಚಯಿಸಿದ ಜೀವಿತಾವಧಿಯನ್ನು ನಾವು ತಲುಪಿದೆವು." ಅಲ್ಲಾಹು ಹೇಳುವನು: "ನರಕಾಗ್ನಿಯೇ ನಿಮ್ಮ ವಾಸಸ್ಥಳ! ನೀವು ಅದರಲ್ಲಿ ಶಾಶ್ವತವಾಗಿ ವಾಸಿಸುವಿರಿ. ಅಲ್ಲಾಹು ಏನು ಇಚ್ಛಿಸುತ್ತಾನೋ ಅದರ ಹೊರತು. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ವಿವೇಕಪೂರ್ಣನು ಮತ್ತು ಸರ್ವಜ್ಞನಾಗಿದ್ದಾನೆ."

وَيَوۡمَ يَحۡشُرُهُمۡ جَمِيعٗا يَٰمَعۡشَرَ ٱلۡجِنِّ قَدِ ٱسۡتَكۡثَرۡتُم مِّنَ ٱلۡإِنسِۖ وَقَالَ أَوۡلِيَآؤُهُم مِّنَ ٱلۡإِنسِ رَبَّنَا ٱسۡتَمۡتَعَ بَعۡضُنَا بِبَعۡضٖ وَبَلَغۡنَآ أَجَلَنَا ٱلَّذِيٓ أَجَّلۡتَ لَنَاۚ قَالَ ٱلنَّارُ مَثۡوَىٰكُمۡ خَٰلِدِينَ فِيهَآ إِلَّا مَا شَآءَ ٱللَّهُۚ إِنَّ رَبَّكَ حَكِيمٌ عَلِيمٞ ١٢٨

---

129. ಈ ರೀತಿ ನಾವು ಅಕ್ರಮಿಗಳನ್ನು ಪರಸ್ಪರ ಆಪ್ತರನ್ನಾಗಿ ಮಾಡುವೆವು. ಅವರು ಮಾಡುತ್ತಿರುವ ದುಷ್ಕರ್ಮಗಳ ಕಾರಣದಿಂದ.

وَكَذَٰلِكَ نُوَلِّي بَعۡضَ ٱلظَّٰلِمِينَ بَعۡضَۢا بِمَا كَانُواْ يَكۡسِبُونَ ١٢٩

---

130. "ಓ ಜಿನ್ನ್ ಮತ್ತು ಮನುಷ್ಯರೇ! ನಿಮಗೆ ನನ್ನ ವಚನಗಳನ್ನು ವಿವರಿಸಿಕೊಡುವ ಮತ್ತು ನಿಮ್ಮ ಈ ದಿನದ ಭೇಟಿಯ ಬಗ್ಗೆ ನಿಮಗೆ ಎಚ್ಚರಿಕೆ ನೀಡುವ ಸಂದೇಶವಾಹಕರು ನಿಮ್ಮಿಂದಲೇ ನಿಮ್ಮ ಬಳಿಗೆ ಬಂದಿಲ್ಲವೇ?" ಅವರು ಉತ್ತರಿಸುವರು: "ನಾವು ನಮ್ಮ ವಿರುದ್ಧವೇ ಸಾಕ್ಷಿಗಳಾಗಿದ್ದೇವೆ." ಇಹಲೋಕ ಜೀವನವು ಅವರನ್ನು ಮರುಳುಗೊಳಿಸಿದೆ. ಅವರು ಸತ್ಯನಿಷೇಧಿಗಳಾಗಿದ್ದರು ಎಂದು ಅವರೇ ಅವರ ವಿರುದ್ಧ ಸಾಕ್ಷಿ ಹೇಳಿದ್ದಾರೆ.

يَٰمَعۡشَرَ ٱلۡجِنِّ وَٱلۡإِنسِ أَلَمۡ يَأۡتِكُمۡ رُسُلٞ مِّنكُمۡ يَقُصُّونَ عَلَيۡكُمۡ ءَايَٰتِي وَيُنذِرُونَكُمۡ لِقَآءَ يَوۡمِكُمۡ هَٰذَاۚ قَالُواْ شَهِدۡنَا عَلَىٰٓ أَنفُسِنَاۖ وَغَرَّتۡهُمُ ٱلۡحَيَوٰةُ ٱلدُّنۡيَا وَشَهِدُواْ عَلَىٰٓ أَنفُسِهِمۡ أَنَّهُمۡ كَانُواْ كَٰفِرِينَ ١٣٠

---

131. ಅದು (ಸಂದೇಶವಾಹಕರನ್ನು ಕಳುಹಿಸಿರುವುದು) ನಿಮ್ಮ

ذَٰلِكَ أَن لَّمۡ يَكُن رَّبُّكَ مُهۡلِكَ ٱلۡقُرَىٰ بِظُلۡمٖ

ಪರಿಪಾಲಕನು (ಅಲ್ಲಾಹು) ಊರುಗಳನ್ನು—ಅವುಗಳ ನಿವಾಸಿಗಳು (ಸತ್ಯದ ಬಗ್ಗೆ) ಅಜ್ಞರಾಗಿರುವಾಗ ಮಾಡಿದ ಅಕ್ರಮದ ನಿಮಿತ್ತ ನಾಶ ಮಾಡುವುದಿಲ್ಲ ಎಂಬ ಕಾರಣದಿಂದಾಗಿದೆ.[1]

وَأَهۡلُهَا غَٰفِلُونَ ١٣١

132. ಪ್ರತಿಯೊಬ್ಬರಿಗೂ ಅವರು ಮಾಡಿದ ಕರ್ಮಗಳಿಗೆ ಅನುಗುಣವಾಗಿ ಅನೇಕ ಪದವಿಗಳಿವೆ. ಅವರು ಮಾಡುತ್ತಿರುವ ಕರ್ಮಗಳ ಕುರಿತು ಅಲ್ಲಾಹು ತಿಳಿಯದವನೇನಲ್ಲ.

وَلِكُلّٖ دَرَجَٰتٞ مِّمَّا عَمِلُواْۚ وَمَا رَبُّكَ بِغَٰفِلٍ عَمَّا يَعۡمَلُونَ ١٣٢

133. ನಿಮ್ಮ ಪರಿಪಾಲಕನು (ಅಲ್ಲಾಹು) ನಿರಪೇಕ್ಷನು ಮತ್ತು ದಯಾಳುವಾಗಿದ್ದಾನೆ. ಅವನು ಇಚ್ಛಿಸಿದರೆ ನಿಮ್ಮನ್ನು ನಿವಾರಿಸಿ, ನಿಮ್ಮ ಸ್ಥಾನದಲ್ಲಿ ಅವನು ಇಚ್ಛಿಸುವ ಬೇರೆ ಜನರನ್ನು ಉತ್ತ-ರಾಧಿಕಾರಿಗಳಾಗಿ ಮಾಡುವನು. ನಿಮ್ಮನ್ನು ಬೇರೆ ಜನರ ವಂಶಸ್ಥರನ್ನಾಗಿ ಮಾಡಿದಂತೆ.

وَرَبُّكَ ٱلۡغَنِيُّ ذُو ٱلرَّحۡمَةِۚ إِن يَشَأۡ يُذۡهِبۡكُمۡ وَيَسۡتَخۡلِفۡ مِنۢ بَعۡدِكُم مَّا يَشَآءُ كَمَآ أَنشَأَكُم مِّن ذُرِّيَّةِ قَوۡمٍ ءَاخَرِينَ ١٣٣

134. ನಿಶ್ಚಯವಾಗಿಯೂ ನಿಮಗೆ ಎಚ್ಚರಿಕೆ ನೀಡಲಾಗುವ ಸಂಗತಿಯು ಬಂದೇ ಬರುತ್ತದೆ. ನಿಮಗೆ (ಅಲ್ಲಾಹನನ್ನು) ಸೋಲಿಸಲು ಸಾಧ್ಯವಿಲ್ಲ.

إِنَّ مَا تُوعَدُونَ لَأٓتٖۖ وَمَآ أَنتُم بِمُعۡجِزِينَ ١٣٤

135. ಹೇಳಿರಿ: “ಓ ನನ್ನ ಜನರೇ! ನೀವು ನಿಮ್ಮ ಸ್ಥಾನದಲ್ಲಿ ಕಾರ್ಯ ನಿರ್ವಹಿಸಿರಿ. ನಾನೂ ಕಾರ್ಯ ನಿರ್ವಹಿಸುತ್ತೇನೆ. ಇಹಲೋಕದ ಅಂತಿಮ ವಿಜಯವು ಯಾರಿಗೆ ಎಂದು ನೀವು ಸದ್ಯವೇ ತಿಳಿಯುವಿರಿ. ನಿಶ್ಚಯವಾಗಿಯೂ ಅಕ್ರಮಿಗಳು ಯಶಸ್ವಿಯಾಗುವುದಿಲ್ಲ.”

قُلۡ يَٰقَوۡمِ ٱعۡمَلُواْ عَلَىٰ مَكَانَتِكُمۡ إِنِّي عَامِلٞۖ فَسَوۡفَ تَعۡلَمُونَ مَن تَكُونُ لَهُۥ عَٰقِبَةُ ٱلدَّارِۚ إِنَّهُۥ لَا يُفۡلِحُ ٱلظَّٰلِمُونَ ١٣٥

136. ಅಲ್ಲಾಹು ಸೃಷ್ಟಿಸಿದ ಕೃಷಿ ಮತ್ತು ಜಾನುವಾರುಗಳಿಂದ ಅವರು ಅವನಿಗೆ ಒಂದು ಪಾಲನ್ನು ನಿಶ್ಚಯಿಸಿದರು. ನಂತರ ತಮ್ಮ ದಾವೆಗೆ ಅನುಗುಣವಾಗಿ, “ಇದು ಅಲ್ಲಾಹನಿಗೆ ಮತ್ತು ಇದು ನಮ್ಮ ದೇವರುಗಳಿಗೆ” ಎಂದು ಅವರು ಹೇಳಿದರು. ಅವರ ದೇವರುಗಳಿಗೆ ಮೀಸಲಿಟ್ಟಿರುವುದು ಅಲ್ಲಾಹನಿಗೆ ತಲುಪುವುದಿಲ್ಲ. ಆದರೆ ಅಲ್ಲಾಹನಿಗೆ ಮೀಸಲಿಟ್ಟಿರುವುದು ಅವರ ದೇವರುಗಳಿಗೆ ತಲುಪುತ್ತದೆ. ಅವರು ನೀಡುವ ತೀರ್ಪು ಬಹಳ ನಿಕೃಷ್ಟವಾಗಿದೆ.[2]

وَجَعَلُواْ لِلَّهِ مِمَّا ذَرَأَ مِنَ ٱلۡحَرۡثِ وَٱلۡأَنۡعَٰمِ نَصِيبٗا فَقَالُواْ هَٰذَا لِلَّهِ بِزَعۡمِهِمۡ وَهَٰذَا لِشُرَكَآئِنَاۖ فَمَا كَانَ لِشُرَكَآئِهِمۡ فَلَا يَصِلُ إِلَى ٱللَّهِۖ وَمَا كَانَ لِلَّهِ فَهُوَ يَصِلُ إِلَىٰ شُرَكَآئِهِمۡۗ سَآءَ مَا يَحۡكُمُونَ ١٣٦

137. ಹೀಗೆ ಬಹುದೇವಾರಾಧಕರಲ್ಲಿ ಹೆಚ್ಚಿನವರಿಗೂ ಅವರ ಮಕ್ಕಳನ್ನು

وَكَذَٰلِكَ زَيَّنَ لِكَثِيرٖ مِّنَ ٱلۡمُشۡرِكِينَ قَتۡلَ

---

[1] ಜೀವನದಲ್ಲಿ ಒಮ್ಮೆಯೂ ಸತ್ಯವನ್ನು ತಿಳಿಯುವ ಅವಕಾಶ ಸಿಗದವರನ್ನು ಅಲ್ಲಾಹು ಶಿಕ್ಷಿಸುವುದಿಲ್ಲವೆಂದು ಇದರಿಂದ ಅರ್ಥಮಾಡಿಕೊಳ್ಳಬಹುದು.

[2] ಅವರು ತಮ್ಮ ಕೃಷಿ ಮತ್ತು ಜಾನುವಾರುಗಳಲ್ಲಿ ಒಂದಂಶವನ್ನು ಅಲ್ಲಾಹನಿಗೆ ಮೀಸಲಿಡುತ್ತಿದ್ದರು. ಅಂದರೆ ಅದನ್ನು ಅತಿಥಿಗಳಿಗೆ, ಬಡವರಿಗೆ, ಪ್ರಯಾಣಿಕರಿಗೆ ಖರ್ಚು ಮಾಡುತ್ತಿದ್ದರು. ಇನ್ನೊಂದು ಅಂಶವನ್ನು ಅವರು ತಮ್ಮ ವಿಗ್ರಹಗಳಿಗೆ ಮೀಸಲಿಡುತ್ತಿದ್ದರು. ಇದನ್ನು ಅವರು ವಿಗ್ರಹಗಳಿಗೆ ಅರ್ಪಿಸುತ್ತಿದ್ದರು. ಕೆಲವೊಮ್ಮೆ ಅವರು ಅಲ್ಲಾಹನಿಗೆ ಮೀಸಲಿಟ್ಟದ್ದನ್ನು ವಿಗ್ರಹಗಳಿಗೆ ಅರ್ಪಿಸುತ್ತಿದ್ದರು. ಆದರೆ ವಿಗ್ರಹಗಳಿಗೆ ಮೀಸಲಿಟ್ಟದ್ದನ್ನು ಅಲ್ಲಾಹನಿಗೆ, ಅಂದರೆ ಅತಿಥಿಗಳಿಗೆ, ಬಡವರಿಗೆ ನೀಡುತ್ತಿರಲಿಲ್ಲ.

أَوۡلَٰدِهِمۡ شُرَكَآؤُهُمۡ لِيُرۡدُوهُمۡ وَلِيَلۡبِسُواْ عَلَيۡهِمۡ
دِينَهُمۡۖ وَلَوۡ شَآءَ ٱللَّهُ مَا فَعَلُوهُۖ فَذَرۡهُمۡ وَمَا
يَفۡتَرُونَ ١٣٧

ಕೊಲ್ಲುವುದನ್ನು ಅವರ ದೇವರುಗಳು ಅಲಂಕರಿಸಿಕೊಟ್ಟಿದ್ದಾರೆ.[1] ಅವರನ್ನು ನಾಶ ಮಾಡುವುದಕ್ಕಾಗಿ ಮತ್ತು ಅವರ ಧರ್ಮವನ್ನು ಅವರಿಗೆ ಗೊಂದಲಗೊಳಿಸುವುದಕ್ಕಾಗಿ. ಅಲ್ಲಾಹು ಇಚ್ಛಿಸುತ್ತಿದ್ದರೆ ಅವರು ಅದನ್ನು ಮಾಡುತ್ತಿರಲಿಲ್ಲ. ಆದ್ದರಿಂದ ಅವರು ಆರೋಪಿಸುವ ವಿಷಯಗಳೊಂದಿಗೆ ಅವರನ್ನು ಬಿಟ್ಟುಬಿಡಿ.

---

وَقَالُواْ هَٰذِهِۦٓ أَنۡعَٰمٞ وَحَرۡثٌ حِجۡرٞ لَّا يَطۡعَمُهَآ
إِلَّا مَن نَّشَآءُ بِزَعۡمِهِمۡ وَأَنۡعَٰمٌ حُرِّمَتۡ ظُهُورُهَا
وَأَنۡعَٰمٞ لَّا يَذۡكُرُونَ ٱسۡمَ ٱللَّهِ عَلَيۡهَا ٱفۡتِرَآءً
عَلَيۡهِۚ سَيَجۡزِيهِم بِمَا كَانُواْ يَفۡتَرُونَ ١٣٨

**138.** ಅವರು ಹೇಳುತ್ತಾರೆ: "ಈ ಜಾನುವಾರುಗಳು ಮತ್ತು ಕೃಷಿಗಳನ್ನು ನಿಷೇಧಿಸಲಾಗಿದೆ. ನಾವು ಇಚ್ಛಿಸುವವರ ಹೊರತು ಯಾರೂ ಇವುಗಳನ್ನು ತಿನ್ನಬಾರದು." ಇದು ಅವರ ದಾವೆಯಾಗಿದೆ. "ಕೆಲವು ಜಾನುವಾರುಗಳ ಬೆನ್ನ ಮೇಲೆ ಸವಾರಿ ಮಾಡುವುದನ್ನು ನಿಷೇಧಿಸಲಾಗಿದೆ ಮತ್ತು ಕೆಲವು ಜಾನುವಾರುಗಳನ್ನು ಕೊಯ್ಯುವಾಗ ಅಲ್ಲಾಹನ ಹೆಸರನ್ನು ಉಚ್ಛರಿಸಬೇಕಾಗಿಲ್ಲ" (ಎಂದು ಅವರು ಹೇಳುತ್ತಾರೆ) ಇವೆಲ್ಲವೂ ಅವರು ಅಲ್ಲಾಹನ ಬಗ್ಗೆ ಆರೋಪಿಸುವ ಸುಳ್ಳುಗಳಾಗಿವೆ. ಅವನು ಅವರ ಆರೋಪಗಳಿಗೆ ತಕ್ಕ ಪ್ರತಿಫಲವನ್ನು ನೀಡುವನು.

---

وَقَالُواْ مَا فِي بُطُونِ هَٰذِهِ ٱلۡأَنۡعَٰمِ خَالِصَةٞ
لِّذُكُورِنَا وَمُحَرَّمٌ عَلَىٰٓ أَزۡوَٰجِنَاۖ وَإِن يَكُن مَّيۡتَةٗ
فَهُمۡ فِيهِ شُرَكَآءُۚ سَيَجۡزِيهِمۡ وَصۡفَهُمۡۚ إِنَّهُۥ
حَكِيمٌ عَلِيمٞ ١٣٩

**139.** ಅವರು ಹೇಳುತ್ತಾರೆ: "ಈ ಜಾನುವಾರುಗಳ ಹೊಟ್ಟೆಯಲ್ಲಿರುವುದು ನಮ್ಮ ಪುರುಷರಿಗೆ ಮಾತ್ರ ಇರುವಂತದ್ದು. ಅದು ನಮ್ಮ ಪತ್ನಿಯರಿಗೆ ನಿಷಿದ್ಧವಾಗಿವೆ." ಆದರೆ ಅದು ಸತ್ತ ಪ್ರಾಣಿಯಾದರೆ ಅವರು ಅದನ್ನು ಸಮಾನವಾಗಿ ಪಾಲು ಮಾಡುತ್ತಾರೆ. ಅವನು ಅವರ ಆರೋಪಗಳಿಗೆ ತಕ್ಕ ಪ್ರತಿಫಲವನ್ನು ನೀಡುವನು. ನಿಶ್ಚಯವಾಗಿಯೂ ಅವನು ವಿವೇಕಪೂರ್ಣನು ಮತ್ತು ಸರ್ವಜ್ಞನಾಗಿದ್ದಾನೆ.

---

قَدۡ خَسِرَ ٱلَّذِينَ قَتَلُوٓاْ أَوۡلَٰدَهُمۡ سَفَهَۢا بِغَيۡرِ
عِلۡمٖ وَحَرَّمُواْ مَا رَزَقَهُمُ ٱللَّهُ ٱفۡتِرَآءً عَلَى ٱللَّهِۚ
قَدۡ ضَلُّواْ وَمَا كَانُواْ مُهۡتَدِينَ ١٤٠

**140.** ಅಜ್ಞಾನದಿಂದ ಅವಿವೇಕಿಗಳಾಗಿ ತಮ್ಮ ಮಕ್ಕಳನ್ನು ಕೊಂದವರು ಮತ್ತು ಅಲ್ಲಾಹನ ಬಗ್ಗೆ ಸುಳ್ಳು ಆರೋಪಿಸುತ್ತಾ ಅಲ್ಲಾಹು ದಯಪಾಲಿಸಿದ ವಸ್ತುಗಳನ್ನು ನಿಷೇಧಿಸಿದವರು ನಷ್ಟಹೊಂದಿದರು. ಅವರು ದಾರಿತಪ್ಪಿ ಹೋದರು. ಅವರು ಸನ್ಮಾರ್ಗದಲ್ಲಿ ಸೇರಲಿಲ್ಲ.

---

وَهُوَ ٱلَّذِيٓ أَنشَأَ جَنَّٰتٖ مَّعۡرُوشَٰتٖ وَغَيۡرَ
مَعۡرُوشَٰتٖ وَٱلنَّخۡلَ وَٱلزَّرۡعَ مُخۡتَلِفًا أُكُلُهُۥ
وَٱلزَّيۡتُونَ وَٱلرُّمَّانَ مُتَشَٰبِهٗا وَغَيۡرَ مُتَشَٰبِهٖۚ كُلُواْ

**141.** ಚಪ್ಪರಗಳಿರುವ ಮತ್ತು ಚಪ್ಪರಗಳಿಲ್ಲದ ತೋಟಗಳನ್ನು, ಖರ್ಜೂರದ ಮರಗಳನ್ನು, ವೈವಿಧ್ಯಮಯ ಫಲಗಳಿರುವ ಕೃಷಿಗಳನ್ನು, ಹೋಲಿಕೆಯಿರುವ ಮತ್ತು ಹೋಲಿಕೆಯಿಲ್ಲದ

---

[1] ಅರೇಬಿಯಾದಲ್ಲಿ ಶಿಶುಹತ್ಯೆ ಸಾಮಾನ್ಯವಾಗಿತ್ತು. ಅವರು ಮಕ್ಕಳನ್ನು ವಿಗ್ರಹಗಳಿಗೆ ಬಲಿ ನೀಡುತ್ತಿದ್ದರು. ಬಡತನದ ಭಯದಿಂದ ಮಕ್ಕಳನ್ನು ಕೊಲ್ಲುತ್ತಿದ್ದರು. ಹೆಣ್ಣು ಮಗು ಹುಟ್ಟಿದರೆ ಅಪಮಾನದಿಂದ ಅದನ್ನು ಜೀವಂತ ದಫನ ಮಾಡುತ್ತಿದ್ದರು. ಇವುಗಳನ್ನು ಅವರು ತಪ್ಪೆಂದು ಭಾವಿಸುತ್ತಿರಲಿಲ್ಲ.

ಆಲಿವ್ ಮತ್ತು ದಾಳಿಂಬೆಗಳನ್ನು ಸೃಷ್ಟಿಸಿದ್ದು ಅವನೇ. ಅವು ಹಣ್ಣು ಬಿಟ್ಟರೆ ಅವುಗಳ ಹಣ್ಣುಗಳನ್ನು ತಿನ್ನಿರಿ ಮತ್ತು ಅವುಗಳನ್ನು ಕೊಯ್ಯುವ ದಿನದಂದು ಅವುಗಳ ಹಕ್ಕನ್ನು (ಝಕಾತನ್ನು) ನೀಡಿರಿ. ದುರ್ವ್ಯಯ ಮಾಡಬೇಡಿ. ನಿಶ್ಚಯವಾಗಿಯೂ ದುರ್ವ್ಯಯ ಮಾಡುವವರನ್ನು ಅಲ್ಲಾಹು ಇಷ್ಟಪಡುವುದಿಲ್ಲ.

مِن ثَمَرِهِۦٓ إِذَآ أَثۡمَرَ وَءَاتُواْ حَقَّهُۥ يَوۡمَ حَصَادِهِۦۖ
وَلَا تُسۡرِفُوٓاْۚ إِنَّهُۥ لَا يُحِبُّ ٱلۡمُسۡرِفِينَ ١٤١

---

142. ಭಾರ ಹೊರುವ ಜಾನುವಾರುಗಳನ್ನು ಮತ್ತು (ಆಹಾರಕ್ಕಾಗಿ) ಕೊಯ್ಯುವ ಜಾನುವಾರುಗಳನ್ನು (ಅವನು ಸೃಷ್ಟಿಸಿದ್ದಾನೆ). ಅಲ್ಲಾಹು ನಿಮಗೆ ಆಹಾರವಾಗಿ ನೀಡಿದ ವಸ್ತುಗಳಿಂದ ತಿನ್ನಿರಿ. ಶೈತಾನನ ಹೆಜ್ಜೆಗಳನ್ನು ಹಿಂಬಾಲಿಸಬೇಡಿ. ನಿಶ್ಚಯವಾಗಿಯೂ ಅವನು ನಿಮಗೆ ಪ್ರತ್ಯಕ್ಷ ಶತ್ರುವಾಗಿದ್ದಾನೆ.

وَمِنَ ٱلۡأَنۡعَٰمِ حَمُولَةٗ وَفَرۡشٗاۚ كُلُواْ مِمَّا رَزَقَكُمُ
ٱللَّهُ وَلَا تَتَّبِعُواْ خُطُوَٰتِ ٱلشَّيۡطَٰنِۚ إِنَّهُۥ لَكُمۡ
عَدُوّٞ مُّبِينٞ ١٤٢

---

143. ಎಂಟು ಜೋಡಿಗಳನ್ನು (ನಾಲ್ಕು ಗಂಡು ಮತ್ತು ನಾಲ್ಕು ಹೆಣ್ಣುಗಳನ್ನು ಅವನು ಸೃಷ್ಟಿಸಿದ್ದಾನೆ). ಕುರಿಗಳಲ್ಲಿ ಎರಡು (ಗಂಡು ಮತ್ತು ಹೆಣ್ಣು) ಹಾಗೂ ಮೇಕೆಗಳಲ್ಲಿ ಎರಡು (ಗಂಡು ಮತ್ತು ಹೆಣ್ಣು). ಕೇಳಿರಿ: "(ಅವುಗಳಲ್ಲಿ) ಅಲ್ಲಾಹು ನಿಷೇಧಿಸಿದ್ದು ಎರಡು ಗಂಡುಗಳನ್ನೋ ಅಥವಾ ಎರಡು ಹೆಣ್ಣುಗಳನ್ನೋ? ಅಥವಾ ಎರಡು ಹೆಣ್ಣುಗಳ ಗರ್ಭಗಳಲ್ಲಿರುವುದನ್ನೋ? ನೀವು ಸತ್ಯವಂತ-ರಾಗಿದ್ದರೆ ಸಾಕ್ಷ್ಯಾಧಾರಗಳೊಂದಿಗೆ ತಿಳಿಸಿಕೊಡಿ."

ثَمَٰنِيَةَ أَزۡوَٰجٖۖ مِّنَ ٱلضَّأۡنِ ٱثۡنَيۡنِ وَمِنَ ٱلۡمَعۡزِ
ٱثۡنَيۡنِۗ قُلۡ ءَآلذَّكَرَيۡنِ حَرَّمَ أَمِ ٱلۡأُنثَيَيۡنِ أَمَّا
ٱشۡتَمَلَتۡ عَلَيۡهِ أَرۡحَامُ ٱلۡأُنثَيَيۡنِۖ نَبِّـُٔونِي بِعِلۡمٍ
إِن كُنتُمۡ صَٰدِقِينَ ١٤٣

---

144. ಒಂಟೆಯಿಂದ ಎರಡು (ಗಂಡು ಮತ್ತು ಹೆಣ್ಣು) ಮತ್ತು ಹಸುವಿನಿಂದ ಎರಡು (ಗಂಡು ಮತ್ತು ಹೆಣ್ಣು). ಕೇಳಿರಿ: "(ಅವುಗಳಲ್ಲಿ) ಅಲ್ಲಾಹು ನಿಷೇಧಿಸಿದ್ದು ಎರಡು ಗಂಡುಗಳನ್ನೋ ಅಥವಾ ಎರಡು ಹೆಣ್ಣುಗಳನ್ನೋ? ಅಥವಾ ಎರಡು ಹೆಣ್ಣುಗಳ ಗರ್ಭಗಳಲ್ಲಿರುವುದನ್ನೋ? ಅಲ್ಲಾಹು ಇದನ್ನು ಆದೇಶಿಸುವಾಗ ನೀವು ಉಪಸ್ಥಿತರಿದ್ದಿರಾ? ಯಾವುದೇ ಜ್ಞಾನವಿಲ್ಲದೆ, ಜನರನ್ನು ದಾರಿ ತಪ್ಪಿಸುವುದಕ್ಕಾಗಿ ಅಲ್ಲಾಹನ ಬಗ್ಗೆ ಸುಳ್ಳು ಆರೋಪಿಸು-ವವನಿಗಿಂತ ದೊಡ್ಡ ಅಕ್ರಮಿ ಯಾರು? ನಿಶ್ಚಯವಾಗಿಯೂ ಅಕ್ರಮವೆಸಗುವ ಜನರಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ."

وَمِنَ ٱلۡإِبِلِ ٱثۡنَيۡنِ وَمِنَ ٱلۡبَقَرِ ٱثۡنَيۡنِۗ قُلۡ
ءَآلذَّكَرَيۡنِ حَرَّمَ أَمِ ٱلۡأُنثَيَيۡنِ أَمَّا ٱشۡتَمَلَتۡ
عَلَيۡهِ أَرۡحَامُ ٱلۡأُنثَيَيۡنِۖ أَمۡ كُنتُمۡ شُهَدَآءَ إِذۡ
وَصَّىٰكُمُ ٱللَّهُ بِهَٰذَاۚ فَمَنۡ أَظۡلَمُ مِمَّنِ ٱفۡتَرَىٰ
عَلَى ٱللَّهِ كَذِبٗا لِّيُضِلَّ ٱلنَّاسَ بِغَيۡرِ عِلۡمٍۚ إِنَّ
ٱللَّهَ لَا يَهۡدِي ٱلۡقَوۡمَ ٱلظَّٰلِمِينَ ١٤٤

---

145. ಹೇಳಿರಿ: "ಆಹಾರ ಸೇವಿಸುವವನಿಗೆ ನಿಷೇಧಿಸಲಾದ ಏನನ್ನೂ ನನಗೆ ನೀಡಲಾದ ದೇವವಾಣಿಯಲ್ಲಿ ನಾನು ಕಾಣುವುದಿಲ್ಲ. ಅದು ಶವ, ಅಥವಾ ಹರಿಯುವ ರಕ್ತ, ಅಥವಾ ಹಂದಿ ಮಾಂಸವಾಗಿದ್ದರೆ ಹೊರತು. ಏಕೆಂದರೆ ಅದು ಹೊಲಸಾಗಿದೆ. ಅಥವಾ ಅಲ್ಲಾಹೇತರರ ಹೆಸರಲ್ಲಿ (ಹರಕೆಯಾಗಿ) ಘೋಷಿಸಲಾದ

قُل لَّآ أَجِدُ فِي مَآ أُوحِيَ إِلَيَّ مُحَرَّمًا عَلَىٰ طَاعِمٖ
يَطۡعَمُهُۥٓ إِلَّآ أَن يَكُونَ مَيۡتَةً أَوۡ دَمٗا مَّسۡفُوحًا
أَوۡ لَحۡمَ خِنزِيرٖ فَإِنَّهُۥ رِجۡسٌ أَوۡ فِسۡقًا أُهِلَّ
لِغَيۡرِ ٱللَّهِ بِهِۦۚ فَمَنِ ٱضۡطُرَّ غَيۡرَ بَاغٖ وَلَا عَادٖ

ಕಾರಣ ನಿಷಿದ್ಧವಾದ ವಸ್ತುಗಳ ಹೊರತು. ಆದರೆ ಯಾರಾದರೂ (ಇವುಗಳನ್ನು ಸೇವಿಸಲು) ನಿರ್ಬಂಧಿತನಾದರೆ ಅವನ ಮೇಲೆ ದೋಷವಿಲ್ಲ. ಆದರೆ ಅವನು ಅಗತ್ಯಕ್ಕಿಂತ ಹೆಚ್ಚು ಸೇವಿಸಬಾರದು ಮತ್ತು (ಅಲ್ಲಾಹು ಅನುಮತಿಸಿದ) ಎಲ್ಲೆಯನ್ನು ಮೀರಬಾರದು. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಕ್ಷಮಿಸುವವನು ಮತ್ತು ಕರುಣೆ ತೋರುವವನಾಗಿದ್ದಾನೆ.”

فَإِنَّ رَبَّكَ غَفُورٌ رَّحِيمٌ ﴿١٤٥﴾

---

146. ನಾವು ಯಹೂದಿಗಳಿಗೆ ಉಗುರುಗಳಿರುವ ಎಲ್ಲಾ ಪ್ರಾಣಿಗಳನ್ನು ನಿಷೇಧಿಸಿದ್ದೆವು. ಹಸು, ಮೇಕೆ ಮುಂತಾದ ಪ್ರಾಣಿಗಳ ಕೊಬ್ಬುಗಳನ್ನು ನಾವು ಅವರಿಗೆ ನಿಷೇಧಿಸಿದ್ದೆವು. ಆದರೆ ಅವುಗಳ ಬೆನ್ನಲ್ಲಿರುವ ಅಥವಾ ಕರುಳುಗಳಲ್ಲಿರುವ ಅಥವಾ ಮೂಳೆಗಳಿಗೆ ಅಂಟಿಕೊಂಡಿರುವ ಕೊಬ್ಬುಗಳ ಹೊರತು. ಇದು ಅವರ ಅತಿರೇಕಕ್ಕೆ ನಾವು ನೀಡಿದ ಶಿಕ್ಷೆಯಾಗಿದೆ. ನಿಶ್ಚಯವಾಗಿಯೂ ನಾವು ಸತ್ಯವಂತರಾಗಿದ್ದೇವೆ.

وَعَلَى ٱلَّذِينَ هَادُواْ حَرَّمۡنَا كُلَّ ذِي ظُفُرٖۖ وَمِنَ ٱلۡبَقَرِ وَٱلۡغَنَمِ حَرَّمۡنَا عَلَيۡهِمۡ شُحُومَهُمَآ إِلَّا مَا حَمَلَتۡ ظُهُورُهُمَآ أَوِ ٱلۡحَوَايَآ أَوۡ مَا ٱخۡتَلَطَ بِعَظۡمٖۚ ذَٰلِكَ جَزَيۡنَٰهُم بِبَغۡيِهِمۡۖ وَإِنَّا لَصَٰدِقُونَ ﴿١٤٦﴾

---

147. ಅವರು ನಿಮ್ಮನ್ನು ನಿಷೇಧಿಸಿದರೆ, ಹೇಳಿರಿ: “ನಿಮ್ಮ ಪರಿಪಾಲಕನು (ಅಲ್ಲಾಹು) ವಿಶಾಲ ದಯೆಯುಳ್ಳವನು. ಆದರೆ ಅಕ್ರಮವೆಸಗಿದ ಜನರಿಂದ ಅವನ ಶಿಕ್ಷೆಯು ನಿವಾರಣೆಯಾಗುವುದಿಲ್ಲ.”

فَإِن كَذَّبُوكَ فَقُل رَّبُّكُمۡ ذُو رَحۡمَةٖ وَٰسِعَةٖ وَلَا يُرَدُّ بَأۡسُهُۥ عَنِ ٱلۡقَوۡمِ ٱلۡمُجۡرِمِينَ ﴿١٤٧﴾

---

148. ಬಹುದೇವಾರಾಧಕರು ಹೇಳುವರು: “ಅಲ್ಲಾಹು ಇಚ್ಛಿಸುತ್ತಿದ್ದರೆ ನಾವು ಅಥವಾ ನಮ್ಮ ಪೂರ್ವಜರು ಸಹಭಾಗಿತ್ವ (ಶಿರ್ಕ್) ಮಾಡುತ್ತಿರಲಿಲ್ಲ ಮತ್ತು ಯಾವುದೇ ವಸ್ತುವನ್ನು ನಿಷೇಧಿಸುತ್ತಿರಲಿಲ್ಲ.” ಅವರಿಗಿಂತ ಮೊದಲಿನವರೂ ಹೀಗೆಯೇ ನಿಷೇಧಿಸಿದ್ದರು—ನಮ್ಮ ಶಿಕ್ಷೆಯ ರುಚಿಯನ್ನು ನೋಡುವವರೆಗೆ. ಹೇಳಿರಿ: “ನಿಮ್ಮ ಬಳಿ ಏನಾದರೂ ಸಾಕ್ಷ್ಯಾಧಾರವಿದೆಯೇ? ಇದ್ದರೆ ಅದನ್ನು ತೋರಿಸಿ. ನೀವು ಊಹಾ-ಪೋಹಗಳನ್ನು ಹಿಂಬಾಲಿಸುತ್ತಿದ್ದೀರಿ. ನೀವು ಕೇವಲ ಸುಳ್ಳನ್ನು ಹೇಳುತ್ತಿದ್ದೀರಿ.”

سَيَقُولُ ٱلَّذِينَ أَشۡرَكُواْ لَوۡ شَآءَ ٱللَّهُ مَآ أَشۡرَكۡنَا وَلَآ ءَابَآؤُنَا وَلَا حَرَّمۡنَا مِن شَيۡءٖۚ كَذَٰلِكَ كَذَّبَ ٱلَّذِينَ مِن قَبۡلِهِمۡ حَتَّىٰ ذَاقُواْ بَأۡسَنَاۗ قُلۡ هَلۡ عِندَكُم مِّنۡ عِلۡمٖ فَتُخۡرِجُوهُ لَنَآۖ إِن تَتَّبِعُونَ إِلَّا ٱلظَّنَّ وَإِنۡ أَنتُمۡ إِلَّا تَخۡرُصُونَ ﴿١٤٨﴾

---

149. ಹೇಳಿರಿ: “ನಿರ್ಣಾಯಕ ಪುರಾವೆಯಿರುವುದು ಅಲ್ಲಾಹನಲ್ಲಿ. ಅವನು ಇಚ್ಛಿಸುತ್ತಿದ್ದರೆ ನಿಮ್ಮೆಲ್ಲರನ್ನೂ ಸನ್ಮಾರ್ಗದಲ್ಲಿ ಸೇರಿಸುತ್ತಿದ್ದನು.”

قُلۡ فَلِلَّهِ ٱلۡحُجَّةُ ٱلۡبَٰلِغَةُۖ فَلَوۡ شَآءَ لَهَدَىٰكُمۡ أَجۡمَعِينَ ﴿١٤٩﴾

---

150. ಹೇಳಿರಿ: “ಅಲ್ಲಾಹು ಇವುಗಳನ್ನು ನಿಷೇಧಿಸಿದ್ದಾನೆಂದು ಸಾಕ್ಷಿ ನುಡಿಯುವ ನಿಮ್ಮ ಸಾಕ್ಷಿಗಳನ್ನು ಕರೆತನ್ನಿರಿ.” ಅವರೇನಾದರೂ ಸಾಕ್ಷಿ ನುಡಿದರೆ ನೀವು ಅವರೊಂದಿಗೆ ಸಾಕ್ಷಿ ನುಡಿಯಬೇಡಿ. ನಮ್ಮ ವಚನಗಳನ್ನು ನಿಷೇಧಿಸಿದ ಮತ್ತು ಪರಲೋಕದಲ್ಲಿ ವಿಶ್ವಾಸವಿಡದ ಜನರ ಸ್ವೇಚ್ಛೆಗಳನ್ನು ಹಿಂಬಾಲಿಸಬೇಡಿ. ಅವರು

قُلۡ هَلُمَّ شُهَدَآءَكُمُ ٱلَّذِينَ يَشۡهَدُونَ أَنَّ ٱللَّهَ حَرَّمَ هَٰذَاۖ فَإِن شَهِدُواْ فَلَا تَشۡهَدۡ مَعَهُمۡۚ وَلَا تَتَّبِعۡ أَهۡوَآءَ ٱلَّذِينَ كَذَّبُواْ بِـَٔايَٰتِنَا وَٱلَّذِينَ لَا يُؤۡمِنُونَ بِٱلۡأٓخِرَةِ وَهُم بِرَبِّهِمۡ يَعۡدِلُونَ ﴿١٥٠﴾

ತಮ್ಮ ಪರಿಪಾಲಕನಿಗೆ (ಅಲ್ಲಾಹನಿಗೆ) ಸರಿಸಾಟಿಗಳನ್ನು ಕಲ್ಪಿಸುವವರಾಗಿದ್ದಾರೆ.

---

151. ಹೇಳಿರಿ: “ಬನ್ನಿ! ನಿಮ್ಮ ಪರಿಪಾಲಕನು (ಅಲ್ಲಾಹು) ನಿಮಗೆ ಏನು ನಿಷೇಧಿಸಿದ್ದಾನೆಂದು ನಾನು ನಿಮಗೆ ಓದಿಕೊಡುವೆನು. (ಅವು ಏನೆಂದರೆ) ನೀವು ಅವನೊಂದಿಗೆ ಏನನ್ನೂ ಸಹಭಾಗಿತ್ವ (ಶಿರ್ಕ್) ಮಾಡಬೇಡಿ, ಮಾತಾಪಿತರಿಗೆ ಒಳಿತು ಮಾಡಿರಿ, ಬಡತನದ ಭಯದಿಂದ ನಿಮ್ಮ ಮಕ್ಕಳನ್ನು ಕೊಲ್ಲಬೇಡಿ—ನಿಮಗೂ, ಅವರಿಗೂ ನಾವು ಆಹಾರ ನೀಡುತ್ತೇವೆ—ಬಹಿರಂಗವಾಗಿರುವ ಮತ್ತು ರಹಸ್ಯವಾಗಿರುವ ಯಾವುದೇ ಅಶ್ಲೀಲತೆಗಳ ಬಳಿಗೆ ಹೋಗಬೇಡಿ ಮತ್ತು ಕಾನೂನುಬದ್ಧ ರೀತಿಯಲ್ಲೇ ಹೊರತು ಅಲ್ಲಾಹು (ಕೊಲ್ಲುವುದನ್ನು) ನಿಷೇಧಿಸಿದ ಜೀವವನ್ನು ಕೊಲ್ಲಬೇಡಿ. ಇವು ಅವನು ನಿಮಗೆ ನೀಡುವ ಆದೇಶಗಳಾಗಿವೆ. ನೀವು ಅರ್ಥಮಾಡಿಕೊಳ್ಳುವುದಕ್ಕಾಗಿ.”

قُلۡ تَعَالَوۡاْ أَتۡلُ مَا حَرَّمَ رَبُّكُمۡ عَلَيۡكُمۡۖ أَلَّا تُشۡرِكُواْ بِهِۦ شَيۡـٔٗاۖ وَبِٱلۡوَٰلِدَيۡنِ إِحۡسَٰنٗاۖ وَلَا تَقۡتُلُوٓاْ أَوۡلَٰدَكُم مِّنۡ إِمۡلَٰقٖ نَّحۡنُ نَرۡزُقُكُمۡ وَإِيَّاهُمۡۖ وَلَا تَقۡرَبُواْ ٱلۡفَوَٰحِشَ مَا ظَهَرَ مِنۡهَا وَمَا بَطَنَۖ وَلَا تَقۡتُلُواْ ٱلنَّفۡسَ ٱلَّتِي حَرَّمَ ٱللَّهُ إِلَّا بِٱلۡحَقِّۚ ذَٰلِكُمۡ وَصَّىٰكُم بِهِۦ لَعَلَّكُمۡ تَعۡقِلُونَ ١٥١

---

152. ಒಳಿತು ಮಾಡುವ ಉದ್ದೇಶದಿಂದಲೇ ಹೊರತು ನೀವು ಅನಾಥರ ಆಸ್ತಿಯನ್ನು ಮುಟ್ಟಬೇಡಿ. ಅವರು ಪ್ರೌಢರಾಗುವ ತನಕ (ಅವರ ಸಂರಕ್ಷಣೆಯನ್ನು ವಹಿಸಿಕೊಳ್ಳಿ). ಅಳತೆ ಮತ್ತು ತೂಕ ಮಾಡುವಾಗ ಪೂರ್ಣವಾಗಿ ಮತ್ತು ನ್ಯಾಯಬದ್ಧವಾಗಿ ಮಾಡಿರಿ. ಒಬ್ಬ ವ್ಯಕ್ತಿಯ ಮೇಲೆ ಅವನ ಸಾಮರ್ಥ್ಯಕ್ಕಿಂತ ಮಿಗಿ-ಲಾಗಿರುವುದನ್ನು ನಾವು ಹೊರಿಸುವುದಿಲ್ಲ. ಮಾತನಾಡುವಾಗ (ಸಾಕ್ಷಿ ನುಡಿಯುವಾಗ) ನ್ಯಾಯದಿಂದ ಮಾತನಾಡಿರಿ. ಅದು ನಿಕಟ ಸಂಬಂಧಿಕನಿಗೆ ಸಂಬಂಧಿಸಿದ ವಿಷಯವಾದರೂ ಸಹ. ಅಲ್ಲಾಹನ ಕರಾರನ್ನು ನೆರವೇರಿಸಿ. ಇವು ಅವನು ನಿಮಗೆ ನೀಡುವ ಆದೇಶಗಳಾಗಿವೆ. ನೀವು ನೆನಪಿಟ್ಟುಕೊಳ್ಳುವುದಕ್ಕಾಗಿ.

وَلَا تَقۡرَبُواْ مَالَ ٱلۡيَتِيمِ إِلَّا بِٱلَّتِي هِيَ أَحۡسَنُ حَتَّىٰ يَبۡلُغَ أَشُدَّهُۥۚ وَأَوۡفُواْ ٱلۡكَيۡلَ وَٱلۡمِيزَانَ بِٱلۡقِسۡطِۖ لَا نُكَلِّفُ نَفۡسًا إِلَّا وُسۡعَهَاۖ وَإِذَا قُلۡتُمۡ فَٱعۡدِلُواْ وَلَوۡ كَانَ ذَا قُرۡبَىٰۖ وَبِعَهۡدِ ٱللَّهِ أَوۡفُواْۚ ذَٰلِكُمۡ وَصَّىٰكُم بِهِۦ لَعَلَّكُمۡ تَذَكَّرُونَ ١٥٢

---

153. ನಿಶ್ಚಯವಾಗಿಯೂ ಇದು ನನ್ನ ನೇರ ಮಾರ್ಗವಾಗಿದೆ. ಆದ್ದರಿಂದ ಈ ಮಾರ್ಗದಲ್ಲಿ ನಡೆಯಿರಿ. ಇತರ ಮಾರ್ಗಗಳಲ್ಲಿ ನಡೆಯಬೇಡಿ. ಅವು ನಿಮ್ಮನ್ನು ಅವನ ಮಾರ್ಗದಿಂದ ಬೇರ್ಪಡಿಸುತ್ತವೆ. ಇವು ಅವನು ನಿಮಗೆ ನೀಡುವ ಆದೇಶಗಳಾಗಿವೆ. ನೀವು ದೇವಭಯವುಳ್ಳವರಾಗುವುದಕ್ಕಾಗಿ.

وَأَنَّ هَٰذَا صِرَٰطِي مُسۡتَقِيمٗا فَٱتَّبِعُوهُۖ وَلَا تَتَّبِعُواْ ٱلسُّبُلَ فَتَفَرَّقَ بِكُمۡ عَن سَبِيلِهِۦۚ ذَٰلِكُمۡ وَصَّىٰكُم بِهِۦ لَعَلَّكُمۡ تَتَّقُونَ ١٥٣

---

154. ಒಳಿತು ಮಾಡುವವರಿಗೆ ಅನುಗ್ರಹದ ಪೂರ್ತೀಕರಣವಾಗಿ, ಮತ್ತು ಎಲ್ಲಾ ವಿಷಯಗಳ ವಿವರಣೆಯಾಗಿ ನಾವು ಮೂಸಾರಿಗೆ ಗ್ರಂಥವನ್ನು ದಯಪಾಲಿಸಿದೆವು. ಅವರು ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಭೇಟಿಯಾಗುವುದರಲ್ಲಿ ವಿಶ್ವಾಸವಿಡುವುದಕ್ಕಾಗಿ.

ثُمَّ ءَاتَيۡنَا مُوسَى ٱلۡكِتَٰبَ تَمَامًا عَلَى ٱلَّذِيٓ أَحۡسَنَ وَتَفۡصِيلٗا لِّكُلِّ شَيۡءٖ وَهُدٗى وَرَحۡمَةٗ لَّعَلَّهُم بِلِقَآءِ رَبِّهِمۡ يُؤۡمِنُونَ ١٥٤

155. ಇದು ನಾವು ಅವತೀರ್ಣಗೊಳಿಸಿದ ಸಮೃದ್ಧಪೂರ್ಣ ಗ್ರಂಥವಾಗಿದೆ. ಆದ್ದರಿಂದ ಇದನ್ನು ಅನುಸರಿಸಿರಿ. ಅಲ್ಲಾಹನನ್ನು ಭಯಪಡಿರಿ. ನಿಮಗೆ ದಯೆ ತೋರಲಾಗುವುದಕ್ಕಾಗಿ.

وَهَٰذَا كِتَٰبٌ أَنزَلۡنَٰهُ مُبَارَكٌ فَٱتَّبِعُوهُ وَٱتَّقُواْ لَعَلَّكُمۡ تُرۡحَمُونَ ١٥٥

156. “ನಮಗಿಂತ ಮೊದಲಿನ ಎರಡು ಸಮುದಾಯಗಳಿಗೆ ಮಾತ್ರ ಗ್ರಂಥವು ಅವತೀರ್ಣವಾಗಿದೆ; ಅವರು ಮಾಡುತ್ತಿದ್ದ ಅಧ್ಯಯನದ ಬಗ್ಗೆ ನಮಗೇನೂ ತಿಳಿದಿರಲಿಲ್ಲ” ಎಂದು ನೀವು ಹೇಳಬಾರದೆಂದು (ಈ ಗ್ರಂಥವನ್ನು ಅವತೀರ್ಣಗೊಳಿಸಲಾಗಿದೆ).

أَن تَقُولُوٓاْ إِنَّمَآ أُنزِلَ ٱلۡكِتَٰبُ عَلَىٰ طَآئِفَتَيۡنِ مِن قَبۡلِنَا وَإِن كُنَّا عَن دِرَاسَتِهِمۡ لَغَٰفِلِينَ ١٥٦

157. ಅಥವಾ, “ನಮಗೊಂದು ಗ್ರಂಥವು ಅವತೀರ್ಣವಾಗುತ್ತಿದ್ದರೆ ನಾವು ಅವರಿಗಿಂತಲೂ ಹೆಚ್ಚು ಸನ್ಮಾರ್ಗ ಪಡೆಯುತ್ತಿದ್ದೆವು” ಎಂದು ನೀವು ಹೇಳಬಾರದೆಂದು (ಈ ಗ್ರಂಥವನ್ನು ಅವತೀರ್ಣಗೊಳಿಸಲಾಗಿದೆ). ಈಗ ನಿಮಗೆ ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಸ್ಪಷ್ಟ ಸಾಕ್ಷ್ಯಾಧಾರ, ಮಾರ್ಗದರ್ಶನ ಮತ್ತು ದಯೆಯು ಬಂದಿದೆ. ಇದರ ಬಳಿಕವೂ ಅಲ್ಲಾಹನ ವಚನಗಳನ್ನು ನಿಷೇಧಿಸುವವನಿಗಿಂತ ಮತ್ತು ಅದರಿಂದ ವಿಮುಖನಾಗುವವನಿಗಿಂತ ದೊಡ್ಡ ಅಕ್ರಮಿ ಯಾರು? ನಮ್ಮ ವಚನಗಳಿಂದ ವಿಮುಖರಾಗುವವರು ಯಾರೋ—ಅವರು ವಿಮುಖರಾದ ಕಾರಣ ನಾವು ಅವರಿಗೆ ಅತಿ ಹೀನ ಶಿಕ್ಷೆಯನ್ನು ನೀಡುವೆವು.

أَوۡ تَقُولُواْ لَوۡ أَنَّآ أُنزِلَ عَلَيۡنَا ٱلۡكِتَٰبُ لَكُنَّآ أَهۡدَىٰ مِنۡهُمۡۚ فَقَدۡ جَآءَكُم بَيِّنَةٞ مِّن رَّبِّكُمۡ وَهُدٗى وَرَحۡمَةٞۚ فَمَنۡ أَظۡلَمُ مِمَّن كَذَّبَ بِـَٔايَٰتِ ٱللَّهِ وَصَدَفَ عَنۡهَاۗ سَنَجۡزِي ٱلَّذِينَ يَصۡدِفُونَ عَنۡ ءَايَٰتِنَا سُوٓءَ ٱلۡعَذَابِ بِمَا كَانُواْ يَصۡدِفُونَ ١٥٧

158. ಅವರ ಬಳಿಗೆ ದೇವದೂತರುಗಳು ಬರುವುದನ್ನು ಅಥವಾ ಅವರ ಪರಿಪಾಲಕನು (ಅಲ್ಲಾಹು) ಬರುವುದನ್ನು ಅಥವಾ ಅವರ ಪರಿಪಾಲಕನ (ಅಲ್ಲಾಹನ) ಕೆಲವು ದೃಷ್ಟಾಂತಗಳು ಬರುವುದನ್ನಲ್ಲದೆ ಅವರು ಬೇರೆ ಏನನ್ನು ಕಾಯುತ್ತಿದ್ದಾರೆ? ನಿಮ್ಮ ಪರಿಪಾಲಕನ (ಅಲ್ಲಾಹನ) ಕೆಲವು ದೃಷ್ಟಾಂತಗಳು ಬರುವ ದಿನದಂದು, ಅದಕ್ಕಿಂತ ಮೊದಲು ಸತ್ಯವಿಶ್ವಾಸಿಯಾದವನು ಅಥವಾ ಸತ್ಯವಿಶ್ವಾಸದಿಂದ ಏನಾದರೂ ಒಳಿತು ಮಾಡಿದವನ ಹೊರತು ಬೇರೆ ಯಾರಿಗೂ ಅವನ ವಿಶ್ವಾಸವು ಉಪಕಾರ ಮಾಡುವುದಿಲ್ಲ. ಹೇಳಿರಿ: “ನೀವು ಕಾಯಿರಿ, ನಿಶ್ಚಯವಾಗಿಯೂ ನಾವು ಕೂಡ ಕಾಯುತ್ತೇವೆ.”

هَلۡ يَنظُرُونَ إِلَّآ أَن تَأۡتِيَهُمُ ٱلۡمَلَٰٓئِكَةُ أَوۡ يَأۡتِيَ رَبُّكَ أَوۡ يَأۡتِيَ بَعۡضُ ءَايَٰتِ رَبِّكَۗ يَوۡمَ يَأۡتِي بَعۡضُ ءَايَٰتِ رَبِّكَ لَا يَنفَعُ نَفۡسًا إِيمَٰنُهَا لَمۡ تَكُنۡ ءَامَنَتۡ مِن قَبۡلُ أَوۡ كَسَبَتۡ فِيٓ إِيمَٰنِهَا خَيۡرٗاۗ قُلِ ٱنتَظِرُوٓاْ إِنَّا مُنتَظِرُونَ ١٥٨

159. ತಮ್ಮ ಧರ್ಮವನ್ನು ಒಡೆದು ವಿವಿಧ ಪಂಗಡಗಳಾಗಿ ಬೇರ್ಪಟ್ಟವರು ಯಾರೋ—ಅವರೊಂದಿಗೆ ನಿಮಗೆ ಯಾವುದೇ ಸಂಬಂಧವಿಲ್ಲ. ಅವರ ವಿಚಾರಣೆ ಮಾಡುವ ಹೊಣೆ ಅಲ್ಲಾಹನದ್ದು. ಅವರು ಮಾಡುತ್ತಿದ್ದ ಕರ್ಮಗಳನ್ನು ನಂತರ ಅವನು ಅವರಿಗೆ ತಿಳಿಸಿಕೊಡುವನು.

إِنَّ ٱلَّذِينَ فَرَّقُواْ دِينَهُمۡ وَكَانُواْ شِيَعٗا لَّسۡتَ مِنۡهُمۡ فِي شَيۡءٍۚ إِنَّمَآ أَمۡرُهُمۡ إِلَى ٱللَّهِ ثُمَّ يُنَبِّئُهُم بِمَا كَانُواْ يَفۡعَلُونَ ١٥٩

| | |
|---|---|
| **160.** ಯಾರು ಒಂದು ಒಳಿತನ್ನು ತರುತ್ತಾನೋ ಅವನಿಗೆ ಅದರ ಹತ್ತು ಪಟ್ಟು ಪ್ರತಿಫಲವಿದೆ. ಯಾರು ಒಂದು ಕೆಡುಕನ್ನು ತರುತ್ತಾನೋ ಅವನಿಗೆ ಅದಕ್ಕೆ ಸಮಾನವಾದ ಶಿಕ್ಷೆಯನ್ನು ಮಾತ್ರ ನೀಡಲಾಗುವುದು. ಅವರಿಗೆ ಸ್ವಲ್ಪವೂ ಅನ್ಯಾಯವಾಗುವುದಿಲ್ಲ. | مَن جَآءَ بِٱلۡحَسَنَةِ فَلَهُۥ عَشۡرُ أَمۡثَالِهَاۖ وَمَن جَآءَ بِٱلسَّيِّئَةِ فَلَا يُجۡزَىٰٓ إِلَّا مِثۡلَهَا وَهُمۡ لَا يُظۡلَمُونَ ١٦٠ |
| **161.** ಹೇಳಿರಿ: "ನಿಶ್ಚಯವಾಗಿಯೂ ನನ್ನ ಪರಿಪಾಲಕನು (ಅಲ್ಲಾಹು) ನನಗೆ ನೇರಮಾರ್ಗವನ್ನು—ಏಕನಿಷ್ಠರಾದ ಇಬ್ರಾಹೀಮರ ನೇರ ಧರ್ಮವನ್ನು ತೋರಿಸಿದ್ದಾನೆ. ಅವರು ಬಹುದೇವಾರಾಧಕರಲ್ಲಿ ಸೇರಿದವರಾಗಿರಲಿಲ್ಲ." | قُلۡ إِنَّنِي هَدَىٰنِي رَبِّيٓ إِلَىٰ صِرَٰطٖ مُّسۡتَقِيمٖ دِينٗا قِيَمٗا مِّلَّةَ إِبۡرَٰهِيمَ حَنِيفٗاۚ وَمَا كَانَ مِنَ ٱلۡمُشۡرِكِينَ ١٦١ |
| **162.** ಹೇಳಿರಿ: "ನಿಶ್ಚಯವಾಗಿಯೂ ನನ್ನ ನಮಾಝ್, ನನ್ನ ಬಲಿದಾನ, ನನ್ನ ಜೀವನ ಮತ್ತು ನನ್ನ ಮರಣ ಎಲ್ಲವೂ ಸರ್ವಲೋಕಗಳ ಪರಿಪಾಲಕನಾದ ಅಲ್ಲಾಹನಿಗೆ ಮೀಸಲು. | قُلۡ إِنَّ صَلَاتِي وَنُسُكِي وَمَحۡيَايَ وَمَمَاتِي لِلَّهِ رَبِّ ٱلۡعَٰلَمِينَ ١٦٢ |
| **163.** ಅವನಿಗೆ ಯಾವುದೇ ಸಹಭಾಗಿಗಳಿಲ್ಲ. ಇದನ್ನೇ ನನಗೆ ಆಜ್ಞಾಪಿಸಲಾಗಿದೆ. ನಾನು ಮುಸಲ್ಮಾನರಲ್ಲಿ (ಶರಣಾದವರಲ್ಲಿ) ಮೊದಲಿಗನಾಗಿದ್ದೇನೆ." | لَا شَرِيكَ لَهُۥۖ وَبِذَٰلِكَ أُمِرۡتُ وَأَنَا۠ أَوَّلُ ٱلۡمُسۡلِمِينَ ١٦٣ |
| **164.** ಹೇಳಿರಿ: "ಅಲ್ಲಾಹು ಸರ್ವ ವಸ್ತುಗಳ ಪರಿಪಾಲಕನಾಗಿರುವಾಗ, ನಾನು ಅವನ ಹೊರತು ಬೇರೆ ಪರಿಪಾಲಕರನ್ನು ಹುಡುಕಬೇಕೇ? ಪ್ರತಿಯೊಬ್ಬನೂ ತಾನು ಮಾಡಿದ ಕರ್ಮಕ್ಕೆ ಉತ್ತರದಾಯಿಯಾಗಿದ್ದಾನೆ. ಪಾಪಗಳ ಭಾರವನ್ನು ಹೊರುವ ಯಾರೂ ಇತರರು ಮಾಡಿದ ಪಾಪಗಳ ಭಾರವನ್ನು ಹೊರುವುದಿಲ್ಲ. ನಂತರ ನೀವು ನಿಮ್ಮ ಪರಿಪಾಲಕನ (ಅಲ್ಲಾಹನ) ಬಳಿಗೆ ಮರಳುವಿರಿ. ಆಗ ನೀವು ಯಾವ ವಿಷಯದಲ್ಲಿ ಭಿನ್ನಮತ ತಳೆದಿರೋ ಅದನ್ನು ಅವನು ನಿಮಗೆ ತಿಳಿಸಿಕೊಡುವನು." | قُلۡ أَغَيۡرَ ٱللَّهِ أَبۡغِي رَبّٗا وَهُوَ رَبُّ كُلِّ شَيۡءٖۚ وَلَا تَكۡسِبُ كُلُّ نَفۡسٍ إِلَّا عَلَيۡهَاۚ وَلَا تَزِرُ وَازِرَةٞ وِزۡرَ أُخۡرَىٰۚ ثُمَّ إِلَىٰ رَبِّكُم مَّرۡجِعُكُمۡ فَيُنَبِّئُكُم بِمَا كُنتُمۡ فِيهِ تَخۡتَلِفُونَ ١٦٤ |
| **165.** ನಿಮ್ಮನ್ನು ಭೂಮಿಯಲ್ಲಿ ಉತ್ತರಾಧಿಕಾರಿಗಳನ್ನಾಗಿ ಮಾಡಿದ್ದು ಅವನೇ. ಅವನು ನಿಮಗೆ ನೀಡಿದ ಅನುಗ್ರಹಗಳಲ್ಲಿ ನಿಮ್ಮನ್ನು ಪರೀಕ್ಷಿಸುವುದಕ್ಕಾಗಿ ನಿಮ್ಮಲ್ಲಿ ಕೆಲವರಿಗೆ ಇತರ ಕೆಲವರಿಗಿಂತ ಶ್ರೇಷ್ಠ ಸ್ಥಾನಮಾನಗಳನ್ನು ನೀಡಿದನು. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಅತಿವೇಗವಾಗಿ ಶಿಕ್ಷೆ ನೀಡುತ್ತಾನೆ ಮತ್ತು ನಿಶ್ಚಯವಾಗಿಯೂ ಅವನು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ. | وَهُوَ ٱلَّذِي جَعَلَكُمۡ خَلَٰٓئِفَ ٱلۡأَرۡضِ وَرَفَعَ بَعۡضَكُمۡ فَوۡقَ بَعۡضٖ دَرَجَٰتٖ لِّيَبۡلُوَكُمۡ فِي مَآ ءَاتَىٰكُمۡۗ إِنَّ رَبَّكَ سَرِيعُ ٱلۡعِقَابِ وَإِنَّهُۥ لَغَفُورٞ رَّحِيمُۢ ١٦٥ |

# 7. ಅಲ್-ಅಅ್‌ರಾಫ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಅಲಿಫ್, ಲಾಮ್, ಮೀಮ್, ಸ್ವಾದ್

الٓمٓصٓ ١

2. ಇದು ನಿಮಗೆ ಅವತೀರ್ಣಗೊಳಿಸಲಾದ ಗ್ರಂಥವಾಗಿದೆ. ಇದರ ಬಗ್ಗೆ ನಿಮ್ಮ ಹೃದಯದಲ್ಲಿ ಯಾವುದೇ ಬೇಸರವುಂಟಾಗ-ದಿರಲಿ. ಇದರ ಮೂಲಕ ನೀವು ಮುನ್ನೆಚ್ಚರಿಕೆ ನೀಡುವುದಕ್ಕಾಗಿ ಮತ್ತು ಸತ್ಯವಿಶ್ವಾಸಿಗಳಿಗೆ ಒಂದು ಉಪದೇಶವಾಗಿ (ಇದನ್ನು ಅವತೀರ್ಣಗೊಳಿಸಲಾಗಿದೆ).

كِتَٰبٌ أُنزِلَ إِلَيۡكَ فَلَا يَكُن فِي صَدۡرِكَ حَرَجٞ مِّنۡهُ لِتُنذِرَ بِهِۦ وَذِكۡرَىٰ لِلۡمُؤۡمِنِينَ ٢

3. ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ನಿಮಗೆ ಅವತೀರ್ಣ-ವಾದುದನ್ನು ಅನುಸರಿಸಿರಿ. ಅವನ ಹೊರತು ಬೇರೆ (ಸ್ವಘೋಷಿತ) ರಕ್ಷಕರನ್ನು ಅನುಸರಿಸಬೇಡಿ. ನೀವು ಸ್ವಲ್ಪವೇ ಉಪದೇಶ ಪಡೆಯುತ್ತೀರಿ.

ٱتَّبِعُواْ مَآ أُنزِلَ إِلَيۡكُم مِّن رَّبِّكُمۡ وَلَا تَتَّبِعُواْ مِن دُونِهِۦٓ أَوۡلِيَآءَۗ قَلِيلٗا مَّا تَذَكَّرُونَ ٣

4. ನಾವು ಎಷ್ಟು ಊರುಗಳನ್ನು ನಾಶ ಮಾಡಿದ್ದೇವೆ! ಅವರು ರಾತ್ರಿ ಅಥವಾ ಮಧ್ಯಾಹ್ನದ ನಿದ್ದೆಯಲ್ಲಿರುವಾಗ ನಮ್ಮ ಶಿಕ್ಷೆಯು ಅವರ ಬಳಿಗೆ ಬಂದಿದೆ.

وَكَم مِّن قَرۡيَةٍ أَهۡلَكۡنَٰهَا فَجَآءَهَا بَأۡسُنَا بَيَٰتًا أَوۡ هُمۡ قَآئِلُونَ ٤

5. ನಮ್ಮ ಶಿಕ್ಷೆಯು ಅವರ ಬಳಿಗೆ ಬಂದಾಗ ಅವರ ರೋದನವು, “ನಾವು ಅಕ್ರಮಿಗಳಾಗಿದ್ದೆವು” ಎಂದು ಹೇಳುವುದಲ್ಲದೆ ಬೇರೇನೂ ಆಗಿರಲಿಲ್ಲ.

فَمَا كَانَ دَعۡوَىٰهُمۡ إِذۡ جَآءَهُم بَأۡسُنَآ إِلَّآ أَن قَالُوٓاْ إِنَّا كُنَّا ظَٰلِمِينَ ٥

6. ಯಾರ ಬಳಿಗೆ ಸಂದೇಶವಾಹಕರನ್ನು ಕಳುಹಿಸಲಾಯಿತೋ ಅವರನ್ನು ನಾವು ಖಂಡಿತ ಪ್ರಶ್ನಿಸುವೆವು. ಅವರ ಬಳಿಗೆ ಕಳುಹಿಸಲಾದ ಸಂದೇಶವಾಹಕರೊಡನೆಯೂ ನಾವು ಪ್ರಶ್ನಿಸುವೆವು.

فَلَنَسۡـَٔلَنَّ ٱلَّذِينَ أُرۡسِلَ إِلَيۡهِمۡ وَلَنَسۡـَٔلَنَّ ٱلۡمُرۡسَلِينَ ٦

7. ನಂತರ (ನಮ್ಮ ಬಳಿಯಿರುವ) ಜ್ಞಾನದ ಮೂಲಕ ನಾವು ಅವರಿಗೆ ವಿವರಿಸಿಕೊಡುವೆವು. ನಾವು ಯಾವುದೇ ಸ್ಥಿತಿಯಲ್ಲೂ ಅವರಿಂದ ದೂರವಾಗಿರಲಿಲ್ಲ.

فَلَنَقُصَّنَّ عَلَيۡهِم بِعِلۡمٖۖ وَمَا كُنَّا غَآئِبِينَ ٧

8. ಆ ದಿನದಂದು (ಕರ್ಮಗಳನ್ನು) ತೂಗುವುದು ಸತ್ಯವಾಗಿದೆ. ಆಗ ಯಾರ ತಕ್ಕಡಿ ಭಾರವಾಗುತ್ತದೋ ಅವರೇ ಯಶಸ್ವಿಯಾದವರು.

وَٱلۡوَزۡنُ يَوۡمَئِذٍ ٱلۡحَقُّۚ فَمَن ثَقُلَتۡ مَوَٰزِينُهُۥ فَأُوْلَٰٓئِكَ هُمُ ٱلۡمُفۡلِحُونَ ٨

9. ಯಾರ ತಕ್ಕಡಿ ಹಗುರವಾಗುತ್ತದೋ ಅವರೇ ಸ್ವಯಂ ನಷ್ಟಹೊಂದಿದವರು. ಏಕೆಂದರೆ ಅವರು ನಮ್ಮ ವಚನಗಳೊಂದಿಗೆ ಅಕ್ರಮವೆಸಗುತ್ತಿದ್ದರು.

وَمَنْ خَفَّتْ مَوَٰزِينُهُۥ فَأُو۟لَـٰٓئِكَ ٱلَّذِينَ خَسِرُوٓا۟
أَنفُسَهُم بِمَا كَانُوا۟ بِـَٔايَـٰتِنَا يَظْلِمُونَ ٩

10. ನಿಶ್ಚಯವಾಗಿಯೂ ನಾವು ನಿಮಗೆ ಭೂಮಿಯಲ್ಲಿ ಅಧಿಕಾರವನ್ನು ನೀಡಿದೆವು. ಅಲ್ಲಿ ನಿಮಗೆ ಉಪಜೀವನ ಮಾರ್ಗಗಳನ್ನು ಮಾಡಿಕೊಟ್ಟೆವು. ನೀವು ಅಲ್ಪವೇ ಕೃತಜ್ಞರಾಗುತ್ತೀರಿ.

وَلَقَدْ مَكَّنَّـٰكُمْ فِى ٱلْأَرْضِ وَجَعَلْنَا لَكُمْ
فِيهَا مَعَـٰيِشَ ۗ قَلِيلًا مَّا تَشْكُرُونَ ١٠

11. ನಿಶ್ಚಯವಾಗಿಯೂ ನಾವು ನಿಮ್ಮನ್ನು ಸೃಷ್ಟಿಸಿದೆವು. ನಂತರ ನಿಮಗೆ ರೂಪವನ್ನು ನೀಡಿದೆವು. ನಂತರ ನಾವು ದೇವದೂತರುಗಳೊಡನೆ ಹೇಳಿದೆವು: “ನೀವು ಆದಮರಿಗೆ ಸಾಷ್ಟಾಂಗ ಮಾಡಿರಿ.” ಅವರು ಸಾಷ್ಟಾಂಗ ಮಾಡಿದರು—ಇಬ್ಲೀಸನ ಹೊರತು. ಅವನು ಸಾಷ್ಟಾಂಗ ಮಾಡುವವರಲ್ಲಿ ಸೇರಲಿಲ್ಲ.

وَلَقَدْ خَلَقْنَـٰكُمْ ثُمَّ صَوَّرْنَـٰكُمْ ثُمَّ قُلْنَا
لِلْمَلَـٰٓئِكَةِ ٱسْجُدُوا۟ لِـَٔادَمَ فَسَجَدُوٓا۟ إِلَّآ إِبْلِيسَ
لَمْ يَكُن مِّنَ ٱلسَّـٰجِدِينَ ١١

12. ಅಲ್ಲಾಹು ಕೇಳಿದನು: “ನಾನು ಸಾಷ್ಟಾಂಗ ಮಾಡಲು ಆಜ್ಞಾಪಿಸಿದಾಗ ನೀನು ಅದನ್ನು ನಿರಾಕರಿಸಲು ಕಾರಣವೇನು?” ಇಬ್ಲೀಸ್ ಹೇಳಿದನು: “ನಾನು ಆದಮರಿಗಿಂತಲೂ ಶ್ರೇಷ್ಠನು. ನೀನು ನನ್ನನ್ನು ಸೃಷ್ಟಿಸಿದ್ದು ಅಗ್ನಿಯಿಂದ ಮತ್ತು ಅವರನ್ನು ಸೃಷ್ಟಿಸಿದ್ದು ಜೇಡಿಮಣ್ಣಿನಿಂದ.”

قَالَ مَا مَنَعَكَ أَلَّا تَسْجُدَ إِذْ أَمَرْتُكَ ۖ قَالَ
أَنَا۠ خَيْرٌ مِّنْهُ خَلَقْتَنِى مِن نَّارٍ وَخَلَقْتَهُۥ
مِن طِينٍ ١٢

13. ಅಲ್ಲಾಹು ಹೇಳಿದನು: “ಇಲ್ಲಿಂದ ಇಳಿದುಹೋಗು. ಇಲ್ಲಿ ನಿನಗೆ ಅಹಂಕಾರದಿಂದ ವರ್ತಿಸಲು ಅಧಿಕಾರವಿಲ್ಲ. ಹೊರಡು! ನಿಶ್ಚಯವಾಗಿಯೂ ನೀನು ಅಪಮಾನಿತರಲ್ಲಿ ಸೇರಿದವನಾಗಿರುವೆ.”

قَالَ فَٱهْبِطْ مِنْهَا فَمَا يَكُونُ لَكَ أَن تَتَكَبَّرَ
فِيهَا فَٱخْرُجْ إِنَّكَ مِنَ ٱلصَّـٰغِرِينَ ١٣

14. ಅವನು ಹೇಳಿದನು: “ಅವರನ್ನು (ಮನುಷ್ಯರನ್ನು) ಜೀವ ನೀಡಿ ಎಬ್ಬಿಸುವ ದಿನದವರೆಗೆ ನನಗೆ ಕಾಲಾವಕಾಶ (ಆಯುಷ್ಯ) ನೀಡು.”

قَالَ أَنظِرْنِىٓ إِلَىٰ يَوْمِ يُبْعَثُونَ ١٤

15. ಅಲ್ಲಾಹು ಹೇಳಿದನು: “ನಿಶ್ಚಯವಾಗಿಯೂ ನೀನು ಕಾಲಾವಕಾಶ ನೀಡಲಾದವರಲ್ಲಿ ಸೇರಿರುವೆ.”

قَالَ إِنَّكَ مِنَ ٱلْمُنظَرِينَ ١٥

16. ಅವನು ಹೇಳಿದನು: “ನೀನು ನನ್ನನ್ನು ದಾರಿತಪ್ಪಿಸಿದ ಕಾರಣ ನಾನು ಖಂಡಿತ ನಿನ್ನ ನೇರಮಾರ್ಗದಲ್ಲಿ ಕುಳಿತು ಅವರಿಗಾಗಿ ಕಾಯುವೆನು.

قَالَ فَبِمَآ أَغْوَيْتَنِى لَأَقْعُدَنَّ لَهُمْ صِرَٰطَكَ
ٱلْمُسْتَقِيمَ ١٦

17. ನಂತರ ಅವರ ಮುಂಭಾಗದಿಂದ, ಅವರ ಹಿಂಭಾಗದಿಂದ, ಅವರ ಬಲಭಾಗದಿಂದ ಮತ್ತು ಅವರ ಎಡಭಾಗದಿಂದ ನಾನು ಖಂಡಿತ ಅವರ ಬಳಿಗೆ ಬರುವೆನು. ಅವರಲ್ಲಿ ಹೆಚ್ಚಿನವರನ್ನೂ

ثُمَّ لَـَٔاتِيَنَّهُم مِّنۢ بَيْنِ أَيْدِيهِمْ وَمِنْ خَلْفِهِمْ
وَعَنْ أَيْمَـٰنِهِمْ وَعَن شَمَآئِلِهِمْ ۖ وَلَا تَجِدُ
أَكْثَرَهُمْ شَـٰكِرِينَ ١٧

ನೀನು ಕೃತಜ್ಞರಾಗಿ ಕಾಣಲಾರೆ.”

18. ಅಲ್ಲಾಹು ಹೇಳಿದನು: “ಇಲ್ಲಿಂದ ಹೊರಡು! ನೀನು ಅಪಮಾನಿತನು ಮತ್ತು ತಿರಸ್ಕೃತನಾಗಿರುವೆ. ಅವರಲ್ಲಿ ಯಾರು ನಿನ್ನನ್ನು ಹಿಂಬಾಲಿಸುತ್ತಾರೋ, (ಅವರು ಸೇರಿದಂತೆ) ನಿಮ್ಮೆಲ್ಲರನ್ನೂ ನಾನು ನರಕದಲ್ಲಿ ತುಂಬಿಸುವೆನು.”

قَالَ ٱخۡرُجۡ مِنۡهَا مَذۡءُومٗا مَّدۡحُورٗاۖ لَّمَن تَبِعَكَ
مِنۡهُمۡ لَأَمۡلَأَنَّ جَهَنَّمَ مِنكُمۡ أَجۡمَعِينَ ١٨

19. “ಓ ಆದಮ್! ನೀವು ಮತ್ತು ನಿಮ್ಮ ಪತ್ನಿ ಸ್ವರ್ಗದಲ್ಲಿ ವಾಸಿಸಿರಿ. ಅಲ್ಲಿ ನೀವುಇಚ್ಛಿಸುವ ಎಲ್ಲಾ ಕಡೆಗಳಿಂದಲೂ ತಿನ್ನಿರಿ. ಆದರೆ ಈ ಮರದ ಸಮೀಪಕ್ಕೆ ಹೋಗಬೇಡಿ. ಹೋದರೆ ನೀವು ಅಕ್ರಮಿಗಳಾಗಿ ಬಿಡುವಿರಿ.”

وَيَٰٓـَٔادَمُ ٱسۡكُنۡ أَنتَ وَزَوۡجُكَ ٱلۡجَنَّةَ فَكُلَا
مِنۡ حَيۡثُ شِئۡتُمَا وَلَا تَقۡرَبَا هَٰذِهِ ٱلشَّجَرَةَ
فَتَكُونَا مِنَ ٱلظَّٰلِمِينَ ١٩

20. (ಆಗ ಆ ಹಣ್ಣನ್ನು ತಿನ್ನುವ ಮೂಲಕ) ಅವರಿಂದ ಮರೆಯಾಗಿದ್ದ ಅವರ ಗುಹ್ಯಭಾಗಗಳನ್ನು ಬಹಿರಂಗಪಡಿಸುವುದಕ್ಕಾಗಿ ಶೈತಾನನು ಅವರಿಬ್ಬರಿಗೂ (ಆ ಹಣ್ಣು ತಿನ್ನುವಂತೆ) ದುಷ್ಪ್ರೇರಣೆ ಮಾಡಿದನು. ಅವನು ಹೇಳಿದನು: “ನೀವಿಬ್ಬರು ದೇವದೂತರಾಗುವಿರಿ ಅಥವಾ ಇಲ್ಲಿ (ಸ್ವರ್ಗದಲ್ಲಿ) ಶಾಶ್ವತವಾಗಿ ವಾಸಿಸುವಿರಿ ಎಂಬ ಕಾರಣದಿಂದಲೇ ನಿಮ್ಮ ಪರಿಪಾಲಕನು ನಿಮ್ಮನ್ನು ಈ ಮರದಿಂದ ತಡೆದಿದ್ದಾನೆ.”

فَوَسۡوَسَ لَهُمَا ٱلشَّيۡطَٰنُ لِيُبۡدِيَ لَهُمَا مَا
وُۥرِيَ عَنۡهُمَا مِن سَوۡءَٰتِهِمَا وَقَالَ مَا نَهَىٰكُمَا
رَبُّكُمَا عَنۡ هَٰذِهِ ٱلشَّجَرَةِ إِلَّآ أَن تَكُونَا
مَلَكَيۡنِ أَوۡ تَكُونَا مِنَ ٱلۡخَٰلِدِينَ ٢٠

21. “ನಿಶ್ಚಯವಾಗಿಯೂ ನಾನು ನಿಮ್ಮ ಹಿತೈಷಿಯಾಗಿದ್ದೇನೆ” ಎಂದು ಅವನು ಪ್ರತಿಜ್ಞೆ ಮಾಡಿ ಹೇಳಿದನು.

وَقَاسَمَهُمَآ إِنِّي لَكُمَا لَمِنَ ٱلنَّٰصِحِينَ ٢١

22. ಹೀಗೆ ಅವನು ಮೋಸದಿಂದ ಅವರಿಬ್ಬರನ್ನು ಕೆಳಗಿಳಿಸಿದನು. ಅವರಿಬ್ಬರು ಆ ಮರದ ಹಣ್ಣಿನ ರುಚಿಯನ್ನು ಸವಿಯುತ್ತಿದ್ದಂತೆ ಅವರಿಗೆ ಅವರ ಗುಹ್ಯಭಾಗಗಳು ಬಹಿರಂಗವಾದವು. ಸ್ವರ್ಗದ ಎಲೆಗಳಿಂದ ಅವರಿಬ್ಬರೂ ತಮ್ಮ ದೇಹಗಳನ್ನು ಮುಚ್ಚತೊಡಗಿದರು. ಆಗ ಅವರನ್ನು ಕರೆದು ಅವರ ಪರಿಪಾಲಕ (ಅಲ್ಲಾಹು) ಹೇಳಿದನು: “ಆ ಮರದಿಂದ ನಾನು ನಿಮ್ಮನ್ನು ತಡೆಯಲಿಲ್ಲವೇ? ನಿಶ್ಚಯವಾಗಿಯೂ ಶೈತಾನನು ನಿಮ್ಮ ಪ್ರತ್ಯಕ್ಷ ಶತ್ರುವೆಂದು ನಾನು ನಿಮಗೆ ಹೇಳಲಿಲ್ಲವೇ?”

فَدَلَّىٰهُمَا بِغُرُورٖۚ فَلَمَّا ذَاقَا ٱلشَّجَرَةَ بَدَتۡ لَهُمَا
سَوۡءَٰتُهُمَا وَطَفِقَا يَخۡصِفَانِ عَلَيۡهِمَا مِن وَرَقِ
ٱلۡجَنَّةِۖ وَنَادَىٰهُمَا رَبُّهُمَآ أَلَمۡ أَنۡهَكُمَا عَن تِلۡكُمَا
ٱلشَّجَرَةِ وَأَقُل لَّكُمَآ إِنَّ ٱلشَّيۡطَٰنَ لَكُمَا عَدُوّٞ
مُّبِينٞ ٢٢

23. ಅವರಿಬ್ಬರು ಹೇಳಿದರು: “ಓ ನಮ್ಮ ಪರಿಪಾಲಕನೇ! ನಾವು ಸ್ವಯಂ ಅಕ್ರಮವೆಸಗಿದ್ದೇವೆ. ನೀನು ನಮ್ಮನ್ನು ಕ್ಷಮಿಸದಿದ್ದರೆ ಮತ್ತು ದಯೆ ತೋರದಿದ್ದರೆ ನಾವು ನಷ್ಟಹೊಂದಿದವರಲ್ಲಿ ಸೇರುವುದು ನಿಶ್ಚಿತ.”

قَالَا رَبَّنَا ظَلَمۡنَآ أَنفُسَنَا وَإِن لَّمۡ تَغۡفِرۡ لَنَا
وَتَرۡحَمۡنَا لَنَكُونَنَّ مِنَ ٱلۡخَٰسِرِينَ ٢٣

24. ಅಲ್ಲಾಹು ಹೇಳಿದನು: “ಇಳಿಯಿರಿ! ನೀವು ಪರಸ್ಪರ

قَالَ ٱهۡبِطُواْ بَعۡضُكُمۡ لِبَعۡضٍ عَدُوّٞۖ وَلَكُمۡ فِي

ಶತ್ರುಗಳಾಗುವಿರಿ. ನಿಮಗೆ ಭೂಮಿಯಲ್ಲಿ ವಾಸ್ತವ್ಯವಿದೆ ಮತ್ತು ಒಂದು ನಿರ್ದಿಷ್ಟ ಕಾಲದ ತನಕ ಜೀವನ ಸವಲತ್ತುಗಳಿವೆ."

ٱلۡأَرۡضِ مُسۡتَقَرّٞ وَمَتَٰعٌ إِلَىٰ حِينٖ ٢٤

---

25. ಅಲ್ಲಾಹು ಹೇಳಿದನು: "ನೀವು ಅಲ್ಲಿಯೇ ಬದುಕುವಿರಿ ಮತ್ತು ಅಲ್ಲಿಯೇ ಸಾಯುವಿರಿ. ನಂತರ ನಿಮ್ಮನ್ನು ಅಲ್ಲಿಂದಲೇ ಹೊರತರಲಾಗುವುದು."

قَالَ فِيهَا تَحۡيَوۡنَ وَفِيهَا تَمُوتُونَ وَمِنۡهَا تُخۡرَجُونَ ٢٥

---

26. ಓ ಆದಮರ ಮಕ್ಕಳೇ! ನಿಮ್ಮ ಗುಹ್ಯಭಾಗಗಳನ್ನು ಮುಚ್ಚಲು ನಾವು ನಿಮಗೆ ಉಡುಪನ್ನು ಇಳಿಸಿಕೊಟ್ಟಿದ್ದೇವೆ. ಅದು ನಿಮಗೆ ಅಲಂಕಾರವೂ ಆಗಿದೆ. ಆದರೆ ದೇವಭಯದ ಉಡುಪು ಅತಿಶ್ರೇಷ್ಠವಾಗಿದೆ. ಅದು ಅಲ್ಲಾಹನ ದೃಷ್ಟಾಂತಗಳಲ್ಲಿ ಸೇರಿದ್ದಾಗಿದೆ. ಅವರು ನೆನಪಿಡುವುದಕ್ಕಾಗಿ.

يَٰبَنِيٓ ءَادَمَ قَدۡ أَنزَلۡنَا عَلَيۡكُمۡ لِبَاسٗا يُوَٰرِي سَوۡءَٰتِكُمۡ وَرِيشٗاۖ وَلِبَاسُ ٱلتَّقۡوَىٰ ذَٰلِكَ خَيۡرٞۚ ذَٰلِكَ مِنۡ ءَايَٰتِ ٱللَّهِ لَعَلَّهُمۡ يَذَّكَّرُونَ ٢٦

---

27. ಓ ಆದಮರ ಮಕ್ಕಳೇ! ನಿಮ್ಮ ತಂದೆ-ತಾಯಿಗಳನ್ನು—ಅವರ ಗುಹ್ಯಭಾಗಗಳನ್ನು ಅವರಿಗೆ ತೋರಿಸಲು ಅವರ ಬಟ್ಟೆಯನ್ನು ಕಳಚಿ ಹಾಕುತ್ತಾ—ಅವರನ್ನು ಸ್ವರ್ಗದಿಂದ ನಿರ್ಗಮಿಸುವಂತೆ ಮಾಡಿದ ಶೈತಾನನು ನಿಮ್ಮನ್ನು ಕೂಡ ಮರುಳುಗೊಳಿಸದಿರಲಿ. ನಿಶ್ಚಯವಾಗಿಯೂ ಅವನು ಮತ್ತು ಅವನ ವಂಶಸ್ಥರು ನಿಮ್ಮನ್ನು ನೋಡುತ್ತಿದ್ದಾರೆ. ಆದರೆ ನಿಮಗೆ ಅವರನ್ನು ನೋಡಲಾಗುವುದಿಲ್ಲ. ನಿಶ್ಚಯವಾಗಿಯೂ ವಿಶ್ವಾಸವಿಡದ ಜನರಿಗೆ ನಾವು ಶೈತಾನರನ್ನು ಮಿತ್ರರನ್ನಾಗಿ ಮಾಡಿದ್ದೇವೆ.

يَٰبَنِيٓ ءَادَمَ لَا يَفۡتِنَنَّكُمُ ٱلشَّيۡطَٰنُ كَمَآ أَخۡرَجَ أَبَوَيۡكُم مِّنَ ٱلۡجَنَّةِ يَنزِعُ عَنۡهُمَا لِبَاسَهُمَا لِيُرِيَهُمَا سَوۡءَٰتِهِمَآۚ إِنَّهُۥ يَرَىٰكُمۡ هُوَ وَقَبِيلُهُۥ مِنۡ حَيۡثُ لَا تَرَوۡنَهُمۡۗ إِنَّا جَعَلۡنَا ٱلشَّيَٰطِينَ أَوۡلِيَآءَ لِلَّذِينَ لَا يُؤۡمِنُونَ ٢٧

---

28. ಅವರು ಏನಾದರೂ ಅಶ್ಲೀಲಕೃತ್ಯ ಮಾಡಿದರೆ, "ನಮ್ಮ ಪೂರ್ವಜರು ಹೀಗೆ ಮಾಡುವುದನ್ನು ನಾವು ನೋಡಿದ್ದೇವೆ; ಅಲ್ಲಾಹು ಇದನ್ನು ನಮಗೆ ಆದೇಶಿಸಿದ್ದಾನೆ" ಎಂದು ಹೇಳುತ್ತಾರೆ. ಹೇಳಿರಿ: "ಅಲ್ಲಾಹು ಅಶ್ಲೀಲಕೃತ್ಯ ಮಾಡಲು ಖಂಡಿತ ಆದೇಶಿಸುವುದಿಲ್ಲ. ನಿಮಗೆ ತಿಳಿದಿಲ್ಲದ ವಿಷಯವನ್ನು ನೀವು ಅಲ್ಲಾಹನ ಮೇಲೆ ಆರೋಪಿಸುತ್ತೀರಾ?"

وَإِذَا فَعَلُواْ فَٰحِشَةٗ قَالُواْ وَجَدۡنَا عَلَيۡهَآ ءَابَآءَنَا وَٱللَّهُ أَمَرَنَا بِهَاۗ قُلۡ إِنَّ ٱللَّهَ لَا يَأۡمُرُ بِٱلۡفَحۡشَآءِۖ أَتَقُولُونَ عَلَى ٱللَّهِ مَا لَا تَعۡلَمُونَ ٢٨

---

29. ಹೇಳಿರಿ: "ನನ್ನ ಪರಿಪಾಲಕ ನನಗೆ ನ್ಯಾಯದಿಂದ ವರ್ತಿಸಲು ಆದೇಶಿಸಿದ್ದಾನೆ. ಎಲ್ಲಾ ಆರಾಧನಾ ಸ್ಥಳಗಳಲ್ಲೂ (ವೇಳೆಗಳಲ್ಲೂ) ನಿಮ್ಮ ಮುಖಗಳನ್ನು (ಅವನ ಕಡೆಗೆ) ನೇರವಾಗಿ ನಿಲ್ಲಿಸಿರಿ ಮತ್ತು ಧರ್ಮವನ್ನು ಅವನಿಗೆ ನಿಷ್ಕಳಂಕಗೊಳಿಸಿ ಅವನಲ್ಲಿ ಪ್ರಾರ್ಥಿಸಿರಿ (ಎಂದು ಅವನು ಆದೇಶಿಸಿದ್ದಾನೆ)." ಅವನು ನಿಮ್ಮನ್ನು ಮೊದಲು ಸೃಷ್ಟಿಸಿದಂತೆಯೇ (ನಿಮ್ಮ ಮರಣದ ಬಳಿಕ) ಪುನಃ ಸೃಷ್ಟಿಸುವನು.

قُلۡ أَمَرَ رَبِّي بِٱلۡقِسۡطِۖ وَأَقِيمُواْ وُجُوهَكُمۡ عِندَ كُلِّ مَسۡجِدٖ وَٱدۡعُوهُ مُخۡلِصِينَ لَهُ ٱلدِّينَۚ كَمَا بَدَأَكُمۡ تَعُودُونَ ٢٩

---

30. ಒಂದು ಗುಂಪಿಗೆ ಅವನು ಸನ್ಮಾರ್ಗವನ್ನು ತೋರಿಸಿದ್ದಾನೆ ಮತ್ತು

فَرِيقًا هَدَىٰ وَفَرِيقًا حَقَّ عَلَيۡهِمُ ٱلضَّلَٰلَةُۚ

ಇನ್ನೊಂದು ಗುಂಪು ದುರ್ಮಾರ್ಗದಲ್ಲಿರಲು ಅರ್ಹರಾಗಿದ್ದಾರೆ. ನಿಶ್ಚಯವಾಗಿಯೂ ಅವರು ಅಲ್ಲಾಹನನ್ನು ಬಿಟ್ಟು ಶೈತಾನರನ್ನು ರಕ್ಷಕರನ್ನಾಗಿ ಸ್ವೀಕರಿಸಿದರು. ಅವರು ಸನ್ಮಾರ್ಗದಲ್ಲಿದ್ದಾರೆಂದೇ ಅವರು ಭಾವಿಸುತ್ತಿದ್ದಾರೆ.

إِنَّهُمُ ٱتَّخَذُواْ ٱلشَّيَٰطِينَ أَوۡلِيَآءَ مِن دُونِ ٱللَّهِ وَيَحۡسَبُونَ أَنَّهُم مُّهۡتَدُونَ ٣٠

---

31. ಓ ಆದಮರ ಮಕ್ಕಳೇ! ಎಲ್ಲಾ ಆರಾಧನಾ ಸ್ಥಳಗಳಲ್ಲೂ (ವೇಳೆಗಳಲ್ಲೂ) ಉಡುಪುಗಳನ್ನು ಧರಿಸಿರಿ.[1] ನೀವು ತಿನ್ನಿರಿ ಮತ್ತು ಕುಡಿಯಿರಿ. ಆದರೆ ದುರ್ವ್ಯಯ ಮಾಡಬೇಡಿ. ದುರ್ವ್ಯಯ ಮಾಡುವವರನ್ನು ಅಲ್ಲಾಹು ಇಷ್ಟಪಡುವುದಿಲ್ಲ.

يَٰبَنِيٓ ءَادَمَ خُذُواْ زِينَتَكُمۡ عِندَ كُلِّ مَسۡجِدٖ وَكُلُواْ وَٱشۡرَبُواْ وَلَا تُسۡرِفُوٓاْۚ إِنَّهُۥ لَا يُحِبُّ ٱلۡمُسۡرِفِينَ ٣١

---

32. ಹೇಳಿರಿ: "ಅಲ್ಲಾಹು ತನ್ನ ದಾಸರಿಗೆ ಹೊರತಂದ ಅಲಂಕಾರದ ಉಡುಪುಗಳನ್ನು ಮತ್ತು ಉತ್ತಮ ಆಹಾರಗಳನ್ನು ನಿಷೇಧಿಸಿದ್ದು ಯಾರು?" ಹೇಳಿರಿ: "ಇಹಲೋಕದಲ್ಲಿ ಅವು ಸತ್ಯವಿಶ್ವಾಸಿಗಳಿಗೆ (ಮತ್ತು ಇತರರಿಗೆ) ಇರುವುದಾಗಿದೆ. ಪುನರುತ್ಥಾನ ದಿನದಲ್ಲಿ ವಿಶೇಷವಾಗಿ ಸತ್ಯವಿಶ್ವಾಸಿಗಳಿಗೆ ಮಾತ್ರ ಇರುವುದಾಗಿದೆ." ಈ ರೀತಿಯಲ್ಲಿ ನಾವು ತಿಳಿದುಕೊಳ್ಳುವ ಜನರಿಗಾಗಿ ವಚನಗಳನ್ನು ವಿವರಿಸಿಕೊಡುತ್ತೇವೆ.

قُلۡ مَنۡ حَرَّمَ زِينَةَ ٱللَّهِ ٱلَّتِيٓ أَخۡرَجَ لِعِبَادِهِۦ وَٱلطَّيِّبَٰتِ مِنَ ٱلرِّزۡقِۚ قُلۡ هِيَ لِلَّذِينَ ءَامَنُواْ فِي ٱلۡحَيَوٰةِ ٱلدُّنۡيَا خَالِصَةٗ يَوۡمَ ٱلۡقِيَٰمَةِۗ كَذَٰلِكَ نُفَصِّلُ ٱلۡأٓيَٰتِ لِقَوۡمٖ يَعۡلَمُونَ ٣٢

---

33. ಹೇಳಿರಿ: "ನನ್ನ ಪರಿಪಾಲಕ (ಅಲ್ಲಾಹು) ನಿಷೇಧಿಸಿರುವುದು ಪ್ರತ್ಯಕ್ಷ ಮತ್ತು ಪರೋಕ್ಷವಾಗಿರುವ ಅಶ್ಲೀಲಕೃತ್ಯಗಳು, ಪಾಪಗಳು, ನ್ಯಾಯರಹಿತವಾದ ದಬ್ಬಾಳಿಕೆಗಳು, ಅಲ್ಲಾಹು ಯಾವುದೇ ಸಾಕ್ಷ್ಯಾಧಾರ ಇಳಿಸಿಕೊಡದ ವಸ್ತುಗಳನ್ನು ಅವನಿಗೆ ಸಹಭಾಗಿಯನ್ನಾಗಿ ಮಾಡುವುದು ಮತ್ತು ಅಲ್ಲಾಹನ ಬಗ್ಗೆ ನಿಮ್ಮ ತಿಳಿದಿಲ್ಲದ ವಿಷಯಗಳನ್ನು ಹೇಳುವುದು ಮಾತ್ರವಾಗಿವೆ."

قُلۡ إِنَّمَا حَرَّمَ رَبِّيَ ٱلۡفَوَٰحِشَ مَا ظَهَرَ مِنۡهَا وَمَا بَطَنَ وَٱلۡإِثۡمَ وَٱلۡبَغۡيَ بِغَيۡرِ ٱلۡحَقِّ وَأَن تُشۡرِكُواْ بِٱللَّهِ مَا لَمۡ يُنَزِّلۡ بِهِۦ سُلۡطَٰنٗا وَأَن تَقُولُواْ عَلَى ٱللَّهِ مَا لَا تَعۡلَمُونَ ٣٣

---

34. ಎಲ್ಲಾ ಸಮುದಾಯಗಳಿಗೂ ಒಂದು ಅವಧಿಯಿದೆ. ಅವರ ಅವಧಿಯು ಬಂದರೆ, ಒಂದು ಕ್ಷಣ ಹಿಂದೂಡಲು ಅಥವಾ ಮುಂದೂಡಲು ಅವರಿಂದ ಸಾಧ್ಯವಿಲ್ಲ.

وَلِكُلِّ أُمَّةٍ أَجَلٞۖ فَإِذَا جَآءَ أَجَلُهُمۡ لَا يَسۡتَأۡخِرُونَ سَاعَةٗ وَلَا يَسۡتَقۡدِمُونَ ٣٤

---

35. ಓ ಆದಮರ ಮಕ್ಕಳೇ! ನನ್ನ ವಚನಗಳನ್ನು ವಿವರಿಸಿಕೊಡುವ ಸಂದೇಶವಾಹಕರುಗಳು ನಿಮ್ಮಿಂದಲೇ ನಿಮ್ಮ ಬಳಿಗೆ ಬಂದರೆ—ಆಗ ಯಾರು ದೇವಭಯದಿಂದ ಜೀವಿಸುತ್ತಾರೋ ಮತ್ತು ಸ್ವಯಂ ಸುಧಾರಿಸಿಕೊಳ್ಳುತ್ತಾರೋ ಅವರಿಗೆ ಯಾವುದೇ ಭಯವಿಲ್ಲ; ಅವರು ದುಃಖಿಸುವುದೂ ಇಲ್ಲ.

يَٰبَنِيٓ ءَادَمَ إِمَّا يَأۡتِيَنَّكُمۡ رُسُلٞ مِّنكُمۡ يَقُصُّونَ عَلَيۡكُمۡ ءَايَٰتِي فَمَنِ ٱتَّقَىٰ وَأَصۡلَحَ فَلَا خَوۡفٌ عَلَيۡهِمۡ وَلَا هُمۡ يَحۡزَنُونَ ٣٥

---

[1] ಮಕ್ಕಾದ ಬಹುದೇವಾರಾಧಕರು ನಗ್ನರಾಗಿ ಕಅಬಾಲಯಕ್ಕೆ ತವಾಫ್ (ಪ್ರದಕ್ಷಿಣೆ) ಮಾಡುತ್ತಿದ್ದರು. ನಾವು ಹುಟ್ಟಿದ ಸ್ಥಿತಿಯಲ್ಲೇ ತವಾಫ್ ಮಾಡುತ್ತೇವೆಂದು ಅವರು ಹೇಳುತ್ತಿದ್ದರು. ಅಲ್ಲಾಹನ ಆಜ್ಞೋಲ್ಲಂಘನೆ ಮಾಡಿದ ಬಟ್ಟೆಗಳನ್ನು ಧರಿಸಿ ಆರಾಧನೆ ಮಾಡಿದರೆ ಸಿಂಧುವಾಗುವುದಿಲ್ಲ ಎಂಬ ನಂಬಿಕೆ ಅವರಲ್ಲಿತ್ತು. ಆದರೆ ಇಸ್ಲಾಂ ಇವೆಲ್ಲವನ್ನೂ ವಿರೋಧಿಸುತ್ತದೆ.

36. ನಮ್ಮ ದೃಷ್ಟಾಂತಗಳನ್ನು ನಿಷೇಧಿಸಿದವರು ಮತ್ತು ಅವುಗಳ ಬಗ್ಗೆ ಅಹಂಕಾರ ತೋರಿದವರು ಯಾರೋ—ಅವರೇ ನರಕವಾಸಿಗಳು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು.

وَٱلَّذِينَ كَذَّبُوا۟ بِـَٔايَٰتِنَا وَٱسْتَكْبَرُوا۟ عَنْهَآ
أُو۟لَٰٓئِكَ أَصْحَٰبُ ٱلنَّارِ ۖ هُمْ فِيهَا خَٰلِدُونَ ﴿٣٦﴾

37. ಅಲ್ಲಾಹನ ಮೇಲೆ ಸುಳ್ಳು ಆರೋಪಿಸುವವನಿಗಿಂತ ಅಥವಾ ಅವನ ವಚನಗಳನ್ನು ನಿಷೇಧಿಸುವವನಿಗಿಂತ ದೊಡ್ಡ ಅಕ್ರಮಿ ಯಾರು? ಅವರು (ಅಲ್ಲಾಹನ) ದಾಖಲೆಯಲ್ಲಿ ಅವರಿಗೆ ನಿಶ್ಚಯಿಸಲಾದ ಪಾಲನ್ನು ಪಡೆಯುವರು. ಎಲ್ಲಿಯವರೆಗೆಂದರೆ, ಅವರ ಪ್ರಾಣ ತೆಗೆಯಲು ನಮ್ಮ ದೂತರು (ದೇವದೂತರು) ಅವರ ಬಳಿಗೆ ಬರುವಾಗ, ಅವರು (ದೇವದೂತರು) ಕೇಳುವರು: "ನೀವು ಅಲ್ಲಾಹನನ್ನು ಬಿಟ್ಟು ಕರೆದು ಪ್ರಾರ್ಥಿಸುತ್ತಿದ್ದವರು ಎಲ್ಲಿದ್ದಾರೆ?" ಅವರು ಉತ್ತರಿಸುವರು: "ಅವರು ನಮ್ಮನ್ನು ಬಿಟ್ಟು ಹೋದರು." ಅವರು ಸತ್ಯನಿಷೇಧಿಗಳಾಗಿದ್ದರೆಂದು ಅವರೇ ಅವರ ವಿರುದ್ಧ ಸಾಕ್ಷಿ ನುಡಿದಿದ್ದಾರೆ.

فَمَنْ أَظْلَمُ مِمَّنِ ٱفْتَرَىٰ عَلَى ٱللَّهِ كَذِبًا أَوْ
كَذَّبَ بِـَٔايَٰتِهِۦٓ ۚ أُو۟لَٰٓئِكَ يَنَالُهُمْ نَصِيبُهُم مِّنَ
ٱلْكِتَٰبِ ۖ حَتَّىٰٓ إِذَا جَآءَتْهُمْ رُسُلُنَا يَتَوَفَّوْنَهُمْ
قَالُوٓا۟ أَيْنَ مَا كُنتُمْ تَدْعُونَ مِن دُونِ ٱللَّهِ ۖ قَالُوا۟
ضَلُّوا۟ عَنَّا وَشَهِدُوا۟ عَلَىٰٓ أَنفُسِهِمْ أَنَّهُمْ كَانُوا۟
كَٰفِرِينَ ﴿٣٧﴾

38. ಅಲ್ಲಾಹು ಹೇಳುವನು: "ನಿಮಗಿಂತ ಮೊದಲು ತೀರಿಹೋದ ಜಿನ್ನ್ ಮತ್ತು ಮನುಷ್ಯರ ಸಮುದಾಯಗಳೊಂದಿಗೆ ನೀವು ಕೂಡ ನರಕವನ್ನು ಪ್ರವೇಶಿಸಿರಿ." ಒಂದೊಂದು ಸಮುದಾಯದವರು ಅದನ್ನು ಪ್ರವೇಶಿಸುವಾಗಲೆಲ್ಲಾ ಅವರಿಗಿಂತ ಮೊದಲಿನ ಸಮುದಾಯವನ್ನು ಶಪಿಸುವರು. ಎಲ್ಲಿಯವರೆಗೆಂದರೆ, ಅವರೆಲ್ಲರೂ ಅಲ್ಲಿ ಒಟ್ಟು ಸೇರಿದಾಗ ನಂತರ ಬಂದವರು ಮೊದಲು ಬಂದವರ ಬಗ್ಗೆ ಹೇಳುವರು: "ಓ ನಮ್ಮ ಪರಿಪಾಲಕನೇ! ಇವರೇ ನಮ್ಮನ್ನು ದಾರಿ ತಪ್ಪಿಸಿದವರು. ಆದ್ದರಿಂದ ಇವರಿಗೆ ನರಕದ ಇಮ್ಮಡಿ ಶಿಕ್ಷೆಯನ್ನು ನೀಡು." ಅಲ್ಲಾಹು ಹೇಳುವನು: "ಎಲ್ಲರಿಗೂ ಇಮ್ಮಡಿ ಶಿಕ್ಷೆಯಿದೆ. ಆದರೆ ನೀವು ತಿಳಿಯುವುದಿಲ್ಲ."

قَالَ ٱدْخُلُوا۟ فِىٓ أُمَمٍ قَدْ خَلَتْ مِن قَبْلِكُم
مِّنَ ٱلْجِنِّ وَٱلْإِنسِ فِى ٱلنَّارِ ۖ كُلَّمَا دَخَلَتْ أُمَّةٌ
لَّعَنَتْ أُخْتَهَا ۖ حَتَّىٰٓ إِذَا ٱدَّارَكُوا۟ فِيهَا جَمِيعًا
قَالَتْ أُخْرَىٰهُمْ لِأُولَىٰهُمْ رَبَّنَا هَٰٓؤُلَآءِ أَضَلُّونَا
فَـَٔاتِهِمْ عَذَابًا ضِعْفًا مِّنَ ٱلنَّارِ ۖ قَالَ لِكُلٍّ
ضِعْفٌ وَلَٰكِن لَّا تَعْلَمُونَ ﴿٣٨﴾

39. ಮೊದಲು ಬಂದವರು ನಂತರ ಬಂದವರೊಡನೆ ಹೇಳುವರು: "ನಿಮಗೆ ನಮಗಿಂತಲೂ ದೊಡ್ಡ ಶ್ರೇಷ್ಠತೆಯೇನಿಲ್ಲ (ನಾವೆಲ್ಲರೂ ಸಮಾನರು). ಆದ್ದರಿಂದ ನೀವು ಮಾಡುತ್ತಿದ್ದ ದುಷ್ಕರ್ಮಗಳ ಶಿಕ್ಷೆಯನ್ನು ನೀವೇ ಅನುಭವಿಸಿರಿ."

وَقَالَتْ أُولَىٰهُمْ لِأُخْرَىٰهُمْ فَمَا كَانَ لَكُمْ
عَلَيْنَا مِن فَضْلٍ فَذُوقُوا۟ ٱلْعَذَابَ بِمَا كُنتُمْ
تَكْسِبُونَ ﴿٣٩﴾

40. ನಮ್ಮ ದೃಷ್ಟಾಂತಗಳನ್ನು ನಿಷೇಧಿಸಿದವರು ಮತ್ತು ಅವುಗಳ ಬಗ್ಗೆ ಅಹಂಕಾರ ತೋರಿದವರು ಯಾರೋ—ಅವರಿಗೆ ಆಕಾಶದ ಬಾಗಿಲುಗಳನ್ನು ತೆರೆದುಕೊಡಲಾಗುವುದಿಲ್ಲ.[1] ಸೂಜಿಯ

إِنَّ ٱلَّذِينَ كَذَّبُوا۟ بِـَٔايَٰتِنَا وَٱسْتَكْبَرُوا۟ عَنْهَا لَا
تُفَتَّحُ لَهُمْ أَبْوَٰبُ ٱلسَّمَآءِ وَلَا يَدْخُلُونَ ٱلْجَنَّةَ

[1] ಅಂದರೆ ಅವರ ಆತ್ಮಗಳು, ಅಥವಾ ಅವರು ಮಾಡಿದ ಕರ್ಮಗಳು, ಅಥವಾ ಅವರ ಪ್ರಾರ್ಥನೆಗಳಿಗೆ ಆಕಾಶದ ಬಾಗಿಲುಗಳು ತೆರೆಯುವುದಿಲ್ಲ

حَتَّىٰ يَلِجَ ٱلۡجَمَلُ فِي سَمِّ ٱلۡخِيَاطِۚ وَكَذَٰلِكَ نَجۡزِي ٱلۡمُجۡرِمِينَ ﴿٤٠﴾

ರಂಧ್ರದಲ್ಲಿ ಒಂಟೆ ಪ್ರವೇಶ ಮಾಡುವ ತನಕ ಅವರು ಸ್ವರ್ಗವನ್ನು ಪ್ರವೇಶಿಸುವುದಿಲ್ಲ. ಈ ರೀತಿ ನಾವು ಅಪರಾಧಿಗಳಿಗೆ ಪ್ರತಿಫಲ ನೀಡುವೆವು.

---

لَهُم مِّن جَهَنَّمَ مِهَادٞ وَمِن فَوۡقِهِمۡ غَوَاشٖۚ وَكَذَٰلِكَ نَجۡزِي ٱلظَّٰلِمِينَ ﴿٤١﴾

41. ಅವರಿಗೆ ನರಕಾಗ್ನಿಯ ಹಾಸಿಗೆಯಿದೆ ಮತ್ತು ಅವರ ಮೇಲ್ಭಾಗದಲ್ಲಿ (ನರಕದ) ಹೊದಿಕೆಗಳೂ ಇವೆ. ಈ ರೀತಿ ನಾವು ಅಕ್ರಮಿಗಳಿಗೆ ಪ್ರತಿಫಲ ನೀಡುವೆವು.

---

وَٱلَّذِينَ ءَامَنُواْ وَعَمِلُواْ ٱلصَّٰلِحَٰتِ لَا نُكَلِّفُ نَفۡسًا إِلَّا وُسۡعَهَآ أُوْلَٰٓئِكَ أَصۡحَٰبُ ٱلۡجَنَّةِۖ هُمۡ فِيهَا خَٰلِدُونَ ﴿٤٢﴾

42. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ—ಒಬ್ಬ ವ್ಯಕ್ತಿಯ ಮೇಲೆ ಅವನ ಸಾಮರ್ಥ್ಯಕ್ಕೆ ಮಿಗಿಲಾದುದನ್ನು ನಾವು ಹೊರಿಸುವುದಿಲ್ಲ. ಅವರೇ ಸ್ವರ್ಗವಾಸಿಗಳು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು.

---

وَنَزَعۡنَا مَا فِي صُدُورِهِم مِّنۡ غِلّٖ تَجۡرِي مِن تَحۡتِهِمُ ٱلۡأَنۡهَٰرُۖ وَقَالُواْ ٱلۡحَمۡدُ لِلَّهِ ٱلَّذِي هَدَىٰنَا لِهَٰذَا وَمَا كُنَّا لِنَهۡتَدِيَ لَوۡلَآ أَنۡ هَدَىٰنَا ٱللَّهُۖ لَقَدۡ جَآءَتۡ رُسُلُ رَبِّنَا بِٱلۡحَقِّۖ وَنُودُوٓاْ أَن تِلۡكُمُ ٱلۡجَنَّةُ أُورِثۡتُمُوهَا بِمَا كُنتُمۡ تَعۡمَلُونَ ﴿٤٣﴾

43. ನಾವು ಅವರ ಹೃದಯಗಳಲ್ಲಿರುವ ದ್ವೇಷವನ್ನು ತೆಗೆದು ಬಿಡುವೆವು. ಅವರ ತಳಭಾಗದಿಂದ ನದಿಗಳು ಹರಿಯುವುವು. ಅವರು ಹೇಳುವರು: "ಇದರ ಕಡೆಗೆ ನಮಗೆ ದಾರಿ ತೋರಿಸಿದ ಅಲ್ಲಾಹನಿಗೆ ಸರ್ವಸ್ತುತಿ. ಅಲ್ಲಾಹು ನಮಗೆ ದಾರಿ ತೋರಿಸದಿದ್ದರೆ ನಾವು ಸನ್ಮಾರ್ಗದಲ್ಲಿರುತ್ತಿರಲಿಲ್ಲ. ನಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಸಂದೇಶವಾಹಕರು ಸತ್ಯದೊಂದಿಗೇ ಬಂದಿದ್ದರು." ಆಗ ಅವರೊಡನೆ ಹೇಳಲಾಗುವುದು: "ನೀವು ಮಾಡಿದ ಕರ್ಮಗಳಿಗೆ ಪ್ರತಿಫಲವಾಗಿ ಈ ಸ್ವರ್ಗವನ್ನು ನೀವು ಉತ್ತರಾಧಿಕಾರವಾಗಿ ಪಡೆದಿರುವಿರಿ."

---

وَنَادَىٰٓ أَصۡحَٰبُ ٱلۡجَنَّةِ أَصۡحَٰبَ ٱلنَّارِ أَن قَدۡ وَجَدۡنَا مَا وَعَدَنَا رَبُّنَا حَقّٗا فَهَلۡ وَجَدتُّم مَّا وَعَدَ رَبُّكُمۡ حَقّٗاۖ قَالُواْ نَعَمۡۚ فَأَذَّنَ مُؤَذِّنُۢ بَيۡنَهُمۡ أَن لَّعۡنَةُ ٱللَّهِ عَلَى ٱلظَّٰلِمِينَ ﴿٤٤﴾

44. ಸ್ವರ್ಗವಾಸಿಗಳು ನರಕವಾಸಿಗಳನ್ನು ಕರೆದು ಹೇಳುವರು: "ನಮ್ಮ ಪರಿಪಾಲಕನು (ಅಲ್ಲಾಹು) ನಮಗೆ ವಾಗ್ದಾನ ಮಾಡಿದ್ದು ಸತ್ಯವಾಗಿ ನೆರವೇರಿದ್ದನ್ನು ನಾವು ಕಂಡಿದ್ದೇವೆ. ನಿಮ್ಮ ಪರಿಪಾಲಕನು (ಅಲ್ಲಾಹು) ನಿಮಗೆ ವಾಗ್ದಾನ ಮಾಡಿದ್ದು ಸತ್ಯವಾಗಿ ನೆರವೇರಿದ್ದನ್ನು ನೀವು ಕಂಡಿದ್ದೀರಾ?" ಅವರು ಉತ್ತರಿಸುವರು: "ಹೌದು." ಆಗ ಅವರ ನಡುವಿನಿಂದ ಒಬ್ಬನು ಘೋಷಿಸುವನು: "ಅಕ್ರಮಿಗಳ ಮೇಲೆ ಅಲ್ಲಾಹನ ಶಾಪವಿರಲಿ."

---

ٱلَّذِينَ يَصُدُّونَ عَن سَبِيلِ ٱللَّهِ وَيَبۡغُونَهَا عِوَجٗا وَهُم بِٱلۡأٓخِرَةِ كَٰفِرُونَ ﴿٤٥﴾

45. ಅವರು (ಅಕ್ರಮಿಗಳು) ಯಾರೆಂದರೆ, ಅಲ್ಲಾಹನ ಮಾರ್ಗದಿಂದ ಜನರನ್ನು ತಡೆಯುವವರು ಮತ್ತು ಅದರಲ್ಲಿ ವಕ್ರತೆಯನ್ನು ಹುಡುಕುವವರು. ಅವರು ಪರಲೋಕವನ್ನು ನಿಷೇಧಿಸುವವರಾಗಿದ್ದಾರೆ.

---

(ಸ್ವೀಕಾರವಾಗುವುದಿಲ್ಲ) ಎಂದರ್ಥ.

46. ಅವರ ನಡುವೆ ಒಂದು ತಡೆಗೋಡೆಯಿದೆ[1] ಮತ್ತು ಅದರ ಎತ್ತರದ ಸ್ಥಳಗಳಲ್ಲಿ ಕೆಲವು ಜನರಿದ್ದಾರೆ.[2] ಅವರು ಎಲ್ಲರನ್ನೂ (ಸ್ವರ್ಗವಾಸಿ ಮತ್ತು ನರಕವಾಸಿಗಳೆಲ್ಲರನ್ನೂ) ಅವರ ಚಿಹ್ನೆಗಳಿಂದ ಗುರುತಿಸುವರು. ಅವರು ಸ್ವರ್ಗವಾಸಿಗಳನ್ನು ಕರೆದು ಹೇಳುವರು: "ನಿಮ್ಮ ಮೇಲೆ ಶಾಂತಿಯಿರಲಿ." ಅವರಿಗೆ ಸ್ವರ್ಗ ಪ್ರವೇಶ ಮಾಡುವ ಆಸೆಯಿದ್ದರೂ ಸಹ ಅವರು ಇನ್ನೂ ಅದನ್ನು ಪ್ರವೇಶಿಸಿಲ್ಲ.

وَبَيۡنَهُمَا حِجَابٞۚ وَعَلَى ٱلۡأَعۡرَافِ رِجَالٞ يَعۡرِفُونَ كُلَّۢا بِسِيمَىٰهُمۡۚ وَنَادَوۡاْ أَصۡحَٰبَ ٱلۡجَنَّةِ أَن سَلَٰمٌ عَلَيۡكُمۡۚ لَمۡ يَدۡخُلُوهَا وَهُمۡ يَطۡمَعُونَ ﴿٤٦﴾

47. ಅವರ ದೃಷ್ಟಿಗಳನ್ನು ನರಕವಾಸಿಗಳ ಕಡೆಗೆ ತಿರುಗಿಸಲಾದಾಗ ಅವರು ಹೇಳುವರು: "ಓ ನಮ್ಮ ಪರಿಪಾಲಕನೇ! ನಮ್ಮನ್ನು ಅಕ್ರಮಿಗಳೊಡನೆ ಸೇರಿಸಬೇಡ."

۞وَإِذَا صُرِفَتۡ أَبۡصَٰرُهُمۡ تِلۡقَآءَ أَصۡحَٰبِ ٱلنَّارِ قَالُواْ رَبَّنَا لَا تَجۡعَلۡنَا مَعَ ٱلۡقَوۡمِ ٱلظَّٰلِمِينَ ﴿٤٧﴾

48. ಎತ್ತರದ ಸ್ಥಳಗಳಲ್ಲಿರುವವರು ಚಿಹ್ನೆಗಳ ಮೂಲಕ ಗುರುತಿಸಿದ ಆ ಜನರನ್ನು (ನರಕವಾಸಿಗಳನ್ನು) ಕರೆದು ಹೇಳುವರು: "ನೀವು ಒಟ್ಟುಗೂಡಿಸಿದ (ಜನ ಮತ್ತು ಧನ) ಮತ್ತು ನೀವು ತೋರುತ್ತಿದ್ದ ಅಹಂಕಾರ ನಿಮಗೇನಾದರೂ ಉಪಕಾರ ಮಾಡಿದೆಯೇ?

وَنَادَىٰٓ أَصۡحَٰبُ ٱلۡأَعۡرَافِ رِجَالٗا يَعۡرِفُونَهُم بِسِيمَىٰهُمۡ قَالُواْ مَآ أَغۡنَىٰ عَنكُمۡ جَمۡعُكُمۡ وَمَا كُنتُمۡ تَسۡتَكۡبِرُونَ ﴿٤٨﴾

49. ಅಲ್ಲಾಹು ದಯೆ ತೋರಲಾರ ಎಂದು ನೀವು ಆಣೆ ಮಾಡಿ ಹೇಳುತ್ತಿದ್ದದ್ದು ಈ ಜನರ ಬಗ್ಗೆಯಲ್ಲವೇ? ನೀವು ಸ್ವರ್ಗವನ್ನು ಪ್ರವೇಶಿಸಿರಿ. ನಿಮಗೆ ಯಾವುದೇ ಭಯವಿಲ್ಲ; ನೀವು ದುಃಖಿಸುವುದೂ ಇಲ್ಲ (ಎಂದು ಅವರೊಡನೆ ಈಗ ಹೇಳಲಾಗಿದೆ)."

أَهَٰٓؤُلَآءِ ٱلَّذِينَ أَقۡسَمۡتُمۡ لَا يَنَالُهُمُ ٱللَّهُ بِرَحۡمَةٍۚ ٱدۡخُلُواْ ٱلۡجَنَّةَ لَا خَوۡفٌ عَلَيۡكُمۡ وَلَآ أَنتُمۡ تَحۡزَنُونَ ﴿٤٩﴾

50. ನರಕವಾಸಿಗಳು ಸ್ವರ್ಗವಾಸಿಗಳನ್ನು ಕರೆದು ಹೇಳುವರು: "ನಮಗೆ ಸ್ವಲ್ಪ ನೀರು ಕೊಡಿ; ಅಥವಾ ಅಲ್ಲಾಹು ನಿಮಗೆ ನೀಡಿರುವ ಆಹಾರಗಳಲ್ಲಿ ಏನಾದರೂ ಕೊಡಿ." ಅವರು (ಸ್ವರ್ಗವಾಸಿಗಳು) ಹೇಳುವರು: "ನಿಶ್ಚಯವಾಗಿಯೂ ಅಲ್ಲಾಹು ಅವೆರಡನ್ನೂ ಸತ್ಯ-ನಿಷೇಧಿಗಳಿಗೆ ನಿಷೇಧಿಸಿದ್ದಾನೆ.

وَنَادَىٰٓ أَصۡحَٰبُ ٱلنَّارِ أَصۡحَٰبَ ٱلۡجَنَّةِ أَنۡ أَفِيضُواْ عَلَيۡنَا مِنَ ٱلۡمَآءِ أَوۡ مِمَّا رَزَقَكُمُ ٱللَّهُۚ قَالُوٓاْ إِنَّ ٱللَّهَ حَرَّمَهُمَا عَلَى ٱلۡكَٰفِرِينَ ﴿٥٠﴾

51. ಅವರು (ಸತ್ಯನಿಷೇಧಿಗಳು) ಯಾರೆಂದರೆ, ತಮ್ಮ ಧರ್ಮವನ್ನು ಆಟ ಮತ್ತು ಮನೋರಂಜನೆಯಾಗಿ ಸ್ವೀಕರಿಸಿದವರು ಹಾಗೂ ಇಹಲೋಕ ಜೀವನಕ್ಕೆ ಮರುಳಾದವರು." ಅವರ ಈ ದಿನದ ಭೇಟಿಯನ್ನು ಅವರು ಮರೆತುಬಿಟ್ಟಂತೆ, ಮತ್ತು ಅವರು ನಮ್ಮ

ٱلَّذِينَ ٱتَّخَذُواْ دِينَهُمۡ لَهۡوٗا وَلَعِبٗا وَغَرَّتۡهُمُ ٱلۡحَيَوٰةُ ٱلدُّنۡيَاۚ فَٱلۡيَوۡمَ نَنسَىٰهُمۡ كَمَا نَسُواْ لِقَآءَ يَوۡمِهِمۡ هَٰذَا وَمَا كَانُواْ بِـَٔايَٰتِنَا يَجۡحَدُونَ ﴿٥١﴾

[1] ಸ್ವರ್ಗ ಮತ್ತು ನರಕಗಳ ನಡುವೆ ಅಥವಾ ಸತ್ಯವಿಶ್ವಾಸಿಗಳು ಮತ್ತು ಸತ್ಯನಿಷೇಧಿಗಳ ನಡುವೆ ಒಂದು ಅಡ್ಡಗೋಡೆಯನ್ನು ಸ್ಥಾಪಿಸಲಾಗುವುದು.

[2] ಹೆಚ್ಚಿನ ವ್ಯಾಖ್ಯಾನಕಾರರ ಪ್ರಕಾರ ಇವರು ಸ್ವರ್ಗ ಅಥವಾ ನರಕಕ್ಕೆ ಹೋಗದೆ ಅತಂತ್ರ ಸ್ಥಿತಿಯಲ್ಲಿರುವವರು. ಇವರ ದುಷ್ಕರ್ಮಗಳು ಇವರನ್ನು ಸ್ವರ್ಗ ಪ್ರವೇಶದಿಂದ ಮತ್ತು ಇವರ ಸತ್ಕರ್ಮಗಳು ಇವರನ್ನು ನರಕ ಪ್ರವೇಶದಿಂದ ತಡೆಯುತ್ತಿವೆ. ಇವರ ಬಗ್ಗೆ ಅಲ್ಲಾಹು ಅಂತಿಮ ತೀರ್ಪು ನೀಡುವ ತನಕ ಇವರು ಇವೆರಡರ ನಡುವಿನಲ್ಲಿರುವರು.

ವಚನಗಳನ್ನು ನಿಷೇಧಿಸಿದಂತೆ, ಇಂದು ನಾವು ಕೂಡ ಅವರನ್ನು ಮರೆತುಬಿಡುವೆವು.

---

52. ಜ್ಞಾನದ ಆಧಾರದಲ್ಲಿ ವಿವರಿಸಲಾದ ಒಂದು ಗ್ರಂಥವನ್ನು ನಾವು ಅವರಿಗೆ ನೀಡಿದ್ದೇವೆ. ಅದು ವಿಶ್ವಾಸವಿಡುವ ಜನರಿಗೆ ಮಾರ್ಗದರ್ಶಿ ಮತ್ತು ದಯೆಯಾಗಿದೆ.

وَلَقَدْ جِئْنَٰهُم بِكِتَٰبٍ فَصَّلْنَٰهُ عَلَىٰ عِلْمٍ هُدًى وَرَحْمَةً لِّقَوْمٍ يُؤْمِنُونَ ﴿٥٢﴾

---

53. ಅವರು ಅದರ ಫಲಿತಾಂಶವನ್ನು ಕಾಯುತ್ತಿದ್ದಾರೆಯೇ?[1] ಅದರ ಫಲಿತಾಂಶವು ಬರುವ ದಿನದಂದು ಅದಕ್ಕೆ ಮುಂಚೆ ಅದನ್ನು ಮರೆತುಬಿಟ್ಟವರು ಹೇಳುವರು: "ನಿಶ್ಚಯವಾಗಿಯೂ ನಮ್ಮ ಪರಿಪಾಲಕನ (ಅಲ್ಲಾಹನ) ಸಂದೇಶವಾಹಕರುಗಳು ಸತ್ಯ ಸಹಿತ ಬಂದಿದ್ದರು. ನಮಗೆ ಶಿಫಾರಸು ಮಾಡುವ ಶಿಫಾರಸುಗಾರರು ಯಾರಾದರೂ ಇದ್ದಾರೆಯೇ? ಅಥವಾ ನಾವು ಈಗಾಗಲೇ ಮಾಡಿದ ಕರ್ಮಗಳಲ್ಲದ ಬೇರೆ ಕರ್ಮಗಳನ್ನು ಮಾಡಲು ನಮ್ಮನ್ನು ಪುನಃ ಇಹಲೋಕಕ್ಕೆ ಕಳುಹಿಸಲಾಗುವುದೇ?" ಅವರು ಸ್ವಯಂ ನಷ್ಟಹೊಂದಿದವರು. ಅವರು ಕಲ್ಪಿಸಿ ಹೇಳುತ್ತಿದ್ದ ವಿಷಯಗಳೆಲ್ಲವೂ ಅವರಿಂದ ಕಣ್ಮರೆಯಾಗಿ ಬಿಡುವುವು.

هَلْ يَنظُرُونَ إِلَّا تَأْوِيلَهُۥ ۚ يَوْمَ يَأْتِى تَأْوِيلُهُۥ يَقُولُ ٱلَّذِينَ نَسُوهُ مِن قَبْلُ قَدْ جَآءَتْ رُسُلُ رَبِّنَا بِٱلْحَقِّ فَهَل لَّنَا مِن شُفَعَآءَ فَيَشْفَعُوا۟ لَنَآ أَوْ نُرَدُّ فَنَعْمَلَ غَيْرَ ٱلَّذِى كُنَّا نَعْمَلُ ۚ قَدْ خَسِرُوٓا۟ أَنفُسَهُمْ وَضَلَّ عَنْهُم مَّا كَانُوا۟ يَفْتَرُونَ ﴿٥٣﴾

---

54. ನಿಶ್ಚಯವಾಗಿಯೂ ಭೂಮ್ಯಾಕಾಶಗಳನ್ನು ಆರು ದಿನಗಳಲ್ಲಿ ಸೃಷ್ಟಿಸಿದ ಅಲ್ಲಾಹನೇ ನಿಮ್ಮ ಪರಿಪಾಲಕನು. ನಂತರ ಅವನು ಸಿಂಹಾಸನದಲ್ಲಿ ಆರೂಢನಾದನು. ಅವನು ಹಗಲನ್ನು ರಾತ್ರಿಯಿಂದ ಮುಚ್ಚುತ್ತಾನೆ. ಆಗ ಅದು ಕ್ಷಿಪ್ರಗತಿಯಲ್ಲಿ ಹಗಲನ್ನು ಹುಡುಕುತ್ತಾ ಸಾಗುತ್ತದೆ. ಸೂರ್ಯ, ಚಂದ್ರ ಮತ್ತು ನಕ್ಷತ್ರಗಳೆಲ್ಲವೂ ಅವನ ಆಜ್ಞೆಗೆ ವಿಧೇಯವಾಗಿವೆ. ತಿಳಿಯಿರಿ! ಸೃಷ್ಟಿ ಮತ್ತು ಆಜ್ಞೆಯು ಅವನದ್ದು. ಸರ್ವಲೋಕಗಳ ಪರಿಪಾಲಕನಾದ ಅಲ್ಲಾಹು ಸಮೃದ್ಧಪೂರ್ಣನಾಗಿದ್ದಾನೆ.

إِنَّ رَبَّكُمُ ٱللَّهُ ٱلَّذِى خَلَقَ ٱلسَّمَٰوَٰتِ وَٱلْأَرْضَ فِى سِتَّةِ أَيَّامٍ ثُمَّ ٱسْتَوَىٰ عَلَى ٱلْعَرْشِ يُغْشِى ٱلَّيْلَ ٱلنَّهَارَ يَطْلُبُهُۥ حَثِيثًا وَٱلشَّمْسَ وَٱلْقَمَرَ وَٱلنُّجُومَ مُسَخَّرَٰتٍۭ بِأَمْرِهِۦٓ ۗ أَلَا لَهُ ٱلْخَلْقُ وَٱلْأَمْرُ ۗ تَبَارَكَ ٱللَّهُ رَبُّ ٱلْعَٰلَمِينَ ﴿٥٤﴾

---

55. ವಿನಯದಿಂದ ಮತ್ತು ರಹಸ್ಯವಾಗಿ ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಕರೆದು ಪ್ರಾರ್ಥಿಸಿರಿ. ನಿಶ್ಚಯವಾಗಿಯೂ ಅವನು ಎಲ್ಲೆ ಮೀರುವವರನ್ನು ಇಷ್ಟಪಡುವುದಿಲ್ಲ.

ٱدْعُوا۟ رَبَّكُمْ تَضَرُّعًا وَخُفْيَةً ۚ إِنَّهُۥ لَا يُحِبُّ ٱلْمُعْتَدِينَ ﴿٥٥﴾

---

56. ಭೂಮಿಯಲ್ಲಿ ಸುಧಾರಣೆ ಮಾಡಿದ ಬಳಿಕ ಅಲ್ಲಿ ಕಿಡಿಗೇಡಿತನ ಮಾಡಬೇಡಿ. ಭಯ ಮತ್ತು ನಿರೀಕ್ಷೆಯಿಂದ ಅವನನ್ನು ಕರೆದು ಪ್ರಾರ್ಥಿಸಿರಿ. ನಿಶ್ಚಯವಾಗಿಯೂ ಅಲ್ಲಾಹನ ದಯೆ ಒಳಿತು ಮಾಡುವವರ ಸಮೀಪದಲ್ಲಿದೆ.

وَلَا تُفْسِدُوا۟ فِى ٱلْأَرْضِ بَعْدَ إِصْلَٰحِهَا وَٱدْعُوهُ خَوْفًا وَطَمَعًا ۚ إِنَّ رَحْمَتَ ٱللَّهِ قَرِيبٌ مِّنَ ٱلْمُحْسِنِينَ ﴿٥٦﴾

---

[1] ಅಂದರೆ ಪವಿತ್ರ ಕುರ್‌ಆನಿನಲ್ಲಿ ನೀಡಲಾದ ಎಚ್ಚರಿಕೆಗಳು ಸತ್ಯವಾಗಿ ಪರಿಣಮಿಸುವುದನ್ನು ಅವರು ಕಾಯುತ್ತಿದ್ದಾರೆಯೇ?

57. ತನ್ನ ದಯೆಗೆ (ಮಳೆಗೆ) ಮೊದಲು ಸುವಾರ್ತೆಯಾಗಿ ಗಾಳಿಯನ್ನು ಕಳುಹಿಸುವವನು ಅವನೇ. ಎಲ್ಲಿಯವರೆಗೆಂದರೆ, ಅದು ಭಾರವಾದ ಮೋಡಗಳನ್ನು ಹೊತ್ತಾಗ ನಾವು ಅದನ್ನು ಬರಡು ಪ್ರದೇಶಕ್ಕೆ ಸಾಗಿಸುವೆವು. ನಂತರ ನಾವು ಅಲ್ಲಿ ಮಳೆ ಸುರಿಸುವೆವು ಮತ್ತು ಅದರಿಂದ ವಿಭಿನ್ನ ಹಣ್ಣುಗಳನ್ನು ಉತ್ಪಾದಿಸುವೆವು. ಇದೇ ರೀತಿ ನಾವು ಸತ್ತವರನ್ನು (ಸಮಾಧಿಯಿಂದ) ಹೊರತರುವೆವು. ನೀವು ಉಪದೇಶ ಪಡೆಯುವುದಕ್ಕಾಗಿ (ಇದನ್ನು ವಿವರಿಸುತ್ತಿದ್ದೇವೆ).

وَهُوَ ٱلَّذِي يُرۡسِلُ ٱلرِّيَٰحَ بُشۡرَۢا بَيۡنَ يَدَيۡ رَحۡمَتِهِۦۖ حَتَّىٰٓ إِذَآ أَقَلَّتۡ سَحَابٗا ثِقَالٗا سُقۡنَٰهُ لِبَلَدٖ مَّيِّتٖ فَأَنزَلۡنَا بِهِ ٱلۡمَآءَ فَأَخۡرَجۡنَا بِهِۦ مِن كُلِّ ٱلثَّمَرَٰتِۚ كَذَٰلِكَ نُخۡرِجُ ٱلۡمَوۡتَىٰ لَعَلَّكُمۡ تَذَكَّرُونَ ٥٧

58. ಉತ್ತಮ ಭೂಮಿಯಲ್ಲಿ ಅದರ ಪರಿಪಾಲಕನ (ಅಲ್ಲಾಹನ) ಅಪ್ಪಣೆಯಂತೆ ಉತ್ತಮ ಬೆಳೆಗಳು ಬೆಳೆಯುತ್ತವೆ. ಆದರೆ ಕೆಟ್ಟ ಭೂಮಿಯಲ್ಲಿ ಸಸ್ಯಗಳು ಶುಷ್ಕವಾಗಿಯಲ್ಲದೆ ಬೆಳೆಯುವುದಿಲ್ಲ. ಕೃತಜ್ಞರಾದ ಜನರಿಗೆ ಈ ರೀತಿ ನಾವು ದೃಷ್ಟಾಂತಗಳನ್ನು ವಿವರಿಸಿಕೊಡುತ್ತೇವೆ.

وَٱلۡبَلَدُ ٱلطَّيِّبُ يَخۡرُجُ نَبَاتُهُۥ بِإِذۡنِ رَبِّهِۦۖ وَٱلَّذِي خَبُثَ لَا يَخۡرُجُ إِلَّا نَكِدٗاۚ كَذَٰلِكَ نُصَرِّفُ ٱلۡأٓيَٰتِ لِقَوۡمٖ يَشۡكُرُونَ ٥٨

59. ನಿಶ್ಚಯವಾಗಿಯೂ ನಾವು ನೂಹರನ್ನು ಅವರ ಜನರ ಬಳಿಗೆ ಕಳುಹಿಸಿದೆವು. ಅವರು ಹೇಳಿದರು: "ಓ ನನ್ನ ಜನರೇ! ಅಲ್ಲಾಹನನ್ನು ಆರಾಧಿಸಿರಿ. ಅವನ ಹೊರತು ನಿಮಗೆ ಬೇರೆ ದೇವರಿಲ್ಲ. ಭಯಾನಕ ದಿನದ ಶಿಕ್ಷೆಯು (ನಿಮ್ಮ ಮೇಲೆರಗಬಹುದೆಂದು) ನಿಶ್ಚಯವಾಗಿಯೂ ನಾನು ಭಯಪಡುತ್ತೇನೆ."

لَقَدۡ أَرۡسَلۡنَا نُوحًا إِلَىٰ قَوۡمِهِۦ فَقَالَ يَٰقَوۡمِ ٱعۡبُدُواْ ٱللَّهَ مَا لَكُم مِّنۡ إِلَٰهٍ غَيۡرُهُۥٓ إِنِّيٓ أَخَافُ عَلَيۡكُمۡ عَذَابَ يَوۡمٍ عَظِيمٖ ٥٩

60. ಅವರ ಜನರ ಮುಖಂಡರು ಹೇಳಿದರು: "ನಿಶ್ಚಯವಾಗಿಯೂ ನೀನು ಸ್ಪಷ್ಟ ದುರ್ಮಾರ್ಗದಲ್ಲಿದ್ದೀ ಎಂದು ನಮಗೆ ತೋರುತ್ತಿದೆ."

قَالَ ٱلۡمَلَأُ مِن قَوۡمِهِۦٓ إِنَّا لَنَرَىٰكَ فِي ضَلَٰلٖ مُّبِينٖ ٦٠

61. ನೂಹ್ ಹೇಳಿದರು: "ಓ ನನ್ನ ಜನರೇ! ನಾನು ಯಾವುದೇ ದುರ್ಮಾರ್ಗದಲ್ಲಿಲ್ಲ. ಬದಲಿಗೆ, ನಾನು ಸರ್ವಲೋಕಗಳ ಪರಿಪಾಲಕನ (ಅಲ್ಲಾಹನ) ಸಂದೇಶವಾಹಕನಾಗಿದ್ದೇನೆ.

قَالَ يَٰقَوۡمِ لَيۡسَ بِي ضَلَٰلَةٞ وَلَٰكِنِّي رَسُولٞ مِّن رَّبِّ ٱلۡعَٰلَمِينَ ٦١

62. ನನ್ನ ಪರಿಪಾಲಕನ (ಅಲ್ಲಾಹನ) ಸಂದೇಶಗಳನ್ನು ನಾನು ನಿಮಗೆ ತಲುಪಿಸುತ್ತೇನೆ ಮತ್ತು ನಿಮ್ಮ ಪ್ರಾಮಾಣಿಕ ಹಿತೈಷಿಯಾಗಿದ್ದೇನೆ. ನೀವು ತಿಳಿದಿರದ ವಿಷಯಗಳನ್ನು ನಾನು ಅಲ್ಲಾಹನಿಂದ ತಿಳಿಯುತ್ತೇನೆ.

أُبَلِّغُكُمۡ رِسَٰلَٰتِ رَبِّي وَأَنصَحُ لَكُمۡ وَأَعۡلَمُ مِنَ ٱللَّهِ مَا لَا تَعۡلَمُونَ ٦٢

63. ನಿಮಗೆ ಎಚ್ಚರಿಕೆ ನೀಡಲು, ನೀವು ದೇವಭಯದಿಂದ ಜೀವಿಸುವಂತಾಗಲು ಮತ್ತು ನಿಮಗೆ ದಯೆ ತೋರುವಂತಾಗಲು ನಿಮ್ಮಲ್ಲೇ ಇರುವ ಒಬ್ಬ ವ್ಯಕ್ತಿಯ ಮೂಲಕ ನಿಮ್ಮ ಪರಿಪಾಲಕನ

أَوَعَجِبۡتُمۡ أَن جَآءَكُمۡ ذِكۡرٞ مِّن رَّبِّكُمۡ عَلَىٰ رَجُلٖ مِّنكُمۡ لِيُنذِرَكُمۡ وَلِتَتَّقُواْ وَلَعَلَّكُمۡ

(ಅಲ್ಲಾಹನ) ಉಪದೇಶವು ನಿಮ್ಮ ಬಳಿಗೆ ಬಂದಿರುವುದನ್ನು ಕಂಡು ನೀವು ಆಶ್ಚರ್ಯಪಡುತ್ತಿದ್ದೀರಾ?”

تُرۡحَمُونَ ٦٣

---

64. ಆದರೆ ಅವರು ನೂಹರನ್ನು ನಿಷೇಧಿಸಿದರು. ಆಗ ನಾವು ಅವರನ್ನು ಮತ್ತು ಅವನ ಅನುಯಾಯಿಗಳನ್ನು ನಾವೆಯಲ್ಲಿ ರಕ್ಷಿಸಿದೆವು. ನಮ್ಮ ವಚನಗಳನ್ನು ನಿಷೇಧಿಸಿದವರನ್ನು ಮುಳುಗಿಸಿದೆವು. ನಿಶ್ಚಯವಾಗಿಯೂ ಅವರು ಕಣ್ಣು ಕಾಣದ ಜನರಾಗಿದ್ದರು.[1]

فَكَذَّبُوهُ فَأَنجَيۡنَٰهُ وَٱلَّذِينَ مَعَهُۥ فِي ٱلۡفُلۡكِ وَأَغۡرَقۡنَا ٱلَّذِينَ كَذَّبُواْ بِـَٔايَٰتِنَآۚ إِنَّهُمۡ كَانُواْ قَوۡمًا عَمِينَ ٦٤

---

65. ಆದ್ ಗೋತ್ರದವರ ಬಳಿಗೆ ನಾವು ಅವರ ಸಹೋದರ ಹೂದರನ್ನು ಕಳುಹಿಸಿದೆವು. ಅವರು ಹೇಳಿದರು: “ಓ ನನ್ನ ಜನರೇ! ಅಲ್ಲಾಹನನ್ನು ಆರಾಧಿಸಿರಿ. ಅವನ ಹೊರತು ನಿಮಗೆ ಬೇರೆ ದೇವರಿಲ್ಲ. ನೀವು ಅವನನ್ನು ಭಯಪಡುವುದಿಲ್ಲವೇ?”

وَإِلَىٰ عَادٍ أَخَاهُمۡ هُودٗاۚ قَالَ يَٰقَوۡمِ ٱعۡبُدُواْ ٱللَّهَ مَا لَكُم مِّنۡ إِلَٰهٍ غَيۡرُهُۥٓۚ أَفَلَا تَتَّقُونَ ٦٥

---

66. ಅವರ ಜನರಲ್ಲಿದ್ದ ಸತ್ಯನಿಷೇಧಿ ಮುಖಂಡರು ಹೇಳಿದರು: “ನಿಶ್ಚಯವಾಗಿಯೂ ನಿನ್ನಲ್ಲಿ ಅವಿವೇಕತನವಿದೆಯೆಂದು ನಮಗೆ ತೋರುತ್ತಿದೆ. ನಿಶ್ಚಯವಾಗಿಯೂ ನೀನು ಸುಳ್ಳು ಹೇಳುತ್ತಿದ್ದೀ ಎಂದು ನಾವು ಭಾವಿಸುತ್ತಿದ್ದೇವೆ.”

قَالَ ٱلۡمَلَأُ ٱلَّذِينَ كَفَرُواْ مِن قَوۡمِهِۦٓ إِنَّا لَنَرَىٰكَ فِي سَفَاهَةٖ وَإِنَّا لَنَظُنُّكَ مِنَ ٱلۡكَٰذِبِينَ ٦٦

---

67. ಹೂದ್ ಹೇಳಿದರು: “ಓ ನನ್ನ ಜನರೇ! ನನ್ನಲ್ಲಿ ಅವಿವೇಕತನವಿಲ್ಲ. ಬದಲಿಗೆ, ನಾನು ಸರ್ವಲೋಕಗಳ ಪರಿಪಾಲಕನ (ಅಲ್ಲಾಹನ) ಸಂದೇಶವಾಹಕನಾಗಿದ್ದೇನೆ.

قَالَ يَٰقَوۡمِ لَيۡسَ بِي سَفَاهَةٞ وَلَٰكِنِّي رَسُولٞ مِّن رَّبِّ ٱلۡعَٰلَمِينَ ٦٧

---

68. ನನ್ನ ಪರಿಪಾಲಕನ (ಅಲ್ಲಾಹನ) ಸಂದೇಶಗಳನ್ನು ನಾನು ನಿಮಗೆ ತಲುಪಿಸುತ್ತೇನೆ. ನಿಶ್ಚಯವಾಗಿಯೂ ನಾನು ನಿಮ್ಮ ಪ್ರಾಮಾಣಿಕ ಹಿತೈಷಿಯಾಗಿದ್ದೇನೆ.

أُبَلِّغُكُمۡ رِسَٰلَٰتِ رَبِّي وَأَنَا۠ لَكُمۡ نَاصِحٌ أَمِينٌ ٦٨

---

69. ನಿಮಗೆ ಎಚ್ಚರಿಕೆ ನೀಡಲು ನಿಮ್ಮಲ್ಲೇ ಇರುವ ಒಬ್ಬ ವ್ಯಕ್ತಿಯ ಮೂಲಕ ನಿಮ್ಮ ಪರಿಪಾಲಕನ (ಅಲ್ಲಾಹನ) ಉಪದೇಶವು ನಿಮ್ಮ ಬಳಿಗೆ ಬಂದಿರುವುದನ್ನು ಕಂಡು ನೀವು ಆಶ್ಚರ್ಯಪಡುತ್ತಿದ್ದೀರಾ? ನೂಹರ ಜನರ ಬಳಿಕ ಅಲ್ಲಾಹು ನಿಮ್ಮನ್ನು ಅವರ ಉತ್ತರಾಧಿಕಾರಿಗಳನ್ನಾಗಿ ಮಾಡಿದ್ದನ್ನು ಸ್ಮರಿಸಿರಿ. ಅವನು ನಿಮಗೆ ದೇಹದಾರ್ಢ್ಯತೆಯನ್ನು ಹೆಚ್ಚಿಸಿಕೊಟ್ಟನು. ಅಲ್ಲಾಹನ ಅನುಗ್ರಹಗಳನ್ನು ಸ್ಮರಿಸಿರಿ. ನೀವು ಯಶಸ್ವಿಯಾಗುವುದಕ್ಕಾಗಿ.”

أَوَعَجِبۡتُمۡ أَن جَآءَكُمۡ ذِكۡرٞ مِّن رَّبِّكُمۡ عَلَىٰ رَجُلٖ مِّنكُمۡ لِيُنذِرَكُمۡۚ وَٱذۡكُرُوٓاْ إِذۡ جَعَلَكُمۡ خُلَفَآءَ مِنۢ بَعۡدِ قَوۡمِ نُوحٖ وَزَادَكُمۡ فِي ٱلۡخَلۡقِ بَصۜۡطَةٗۖ فَٱذۡكُرُوٓاْ ءَالَآءَ ٱللَّهِ لَعَلَّكُمۡ تُفۡلِحُونَ ٦٩

---

70. ಅವರು ಹೇಳಿದರು: “ನಾವು ಅಲ್ಲಾಹನನ್ನು ಮಾತ್ರ ಆರಾಧಿಸಬೇಕು ಮತ್ತು ನಮ್ಮ ಪೂರ್ವಜರು ಆರಾಧಿಸುತ್ತಿದ್ದ

قَالُوٓاْ أَجِئۡتَنَا لِنَعۡبُدَ ٱللَّهَ وَحۡدَهُۥ وَنَذَرَ مَا كَانَ يَعۡبُدُ ءَابَآؤُنَا فَأۡتِنَا بِمَا تَعِدُنَآ إِن كُنتَ مِنَ

---

[1] ಅಂದರೆ ಅವರು ಸತ್ಯದ ಬಗ್ಗೆ ಕುರುಡರಾಗಿದ್ದರು.

ದೇವರುಗಳನ್ನು ಬಿಟ್ಟುಬಿಡಬೇಕು ಎಂದು ಹೇಳಲು ನೀನು ನಮ್ಮ ಬಳಿಗೆ ಬಂದಿರುವೆಯಾ? ನೀನು ನಮಗೆ ಹೆದರಿಸುತ್ತಿರುವ ಆ ಶಿಕ್ಷೆಯನ್ನು ತಂದು ತೋರಿಸು. ನೀನು ಸತ್ಯವನ್ನೇ ಹೇಳುತ್ತಿದ್ದರೆ."

ٱلصَّٰدِقِينَ ٧٠

---

71. ಹೂದ್ ಹೇಳಿದರು: "ನಿಮ್ಮ ಪರಿಪಾಲಕನ (ಅಲ್ಲಾಹನ) ಶಿಕ್ಷೆ ಮತ್ತು ಕೋಪ ಈಗಾಗಲೇ ನಿಮ್ಮ ಮೇಲೆರಗಿದೆ. ನೀವು ಮತ್ತು ನಿಮ್ಮ ಪೂರ್ವಜರು ಹೆಸರಿಟ್ಟ ಕೆಲವು ದೇವರುಗಳ ಹೆಸರುಗಳನ್ನು ಹೇಳಿ ನೀವು ನನ್ನೊಂದಿಗೆ ತರ್ಕಿಸುತ್ತೀರಾ? ಅಲ್ಲಾಹು ಅದಕ್ಕೆ (ಅವರು ದೇವರುಗಳು ಎಂಬುದಕ್ಕೆ) ಯಾವುದೇ ಸಾಕ್ಷ್ಯಾಧಾರ-ಗಳನ್ನು ಇಳಿಸಿಲ್ಲ. ನೀವು ಕಾಯಿರಿ. ನಿಶ್ಚಯವಾಗಿಯೂ ನಾನೂ ನಿಮ್ಮೊಂದಿಗೆ ಕಾಯುತ್ತೇನೆ."

قَالَ قَدْ وَقَعَ عَلَيْكُم مِّن رَّبِّكُمْ رِجْسٌ
وَغَضَبٌۖ أَتُجَٰدِلُونَنِى فِىٓ أَسْمَآءٍ سَمَّيْتُمُوهَآ
أَنتُمْ وَءَابَآؤُكُم مَّا نَزَّلَ ٱللَّهُ بِهَا مِن سُلْطَٰنٍۚ
فَٱنتَظِرُوٓا۟ إِنِّى مَعَكُم مِّنَ ٱلْمُنتَظِرِينَ ٧١

---

72. ನಂತರ ನಾವು ಹೂದರನ್ನು ಮತ್ತು ಅವರ ಅನುಯಾಯಿಗಳನ್ನು ನಮ್ಮ ದಯೆಯಿಂದ ರಕ್ಷಿಸಿದೆವು. ನಮ್ಮ ವಚನಗಳನ್ನು ನಿಷೇ-ಧಿಸಿದವರನ್ನು ಮತ್ತು ವಿಶ್ವಾಸವಿಡದವರನ್ನು ನಾವು ನಿರ್ನಾಮ ಮಾಡಿದೆವು.

فَأَنجَيْنَٰهُ وَٱلَّذِينَ مَعَهُۥ بِرَحْمَةٍ مِّنَّا وَقَطَعْنَا دَابِرَ
ٱلَّذِينَ كَذَّبُوا۟ بِـَٔايَٰتِنَاۖ وَمَا كَانُوا۟ مُؤْمِنِينَ ٧٢

---

73. ಸಮೂದ್ ಗೋತ್ರದವರ ಬಳಿಗೆ ನಾವು ಅವರ ಸಹೋದರ ಸ್ವಾಲಿಹರನ್ನು ಕಳುಹಿಸಿದೆವು. ಅವರು ಹೇಳಿದರು: "ಓ ನನ್ನ ಜನರೇ! ಅಲ್ಲಾಹನನ್ನು ಆರಾಧಿಸಿರಿ. ಅವನ ಹೊರತು ನಿಮಗೆ ಬೇರೆ ದೇವರಿಲ್ಲ. ನಿಮಗೆ ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಸ್ಪಷ್ಟ ಸಾಕ್ಷ್ಯಾಧಾರಗಳು ಬಂದಿವೆ. ಇದು ಅಲ್ಲಾಹನ ಒಂಟೆ. ಇದು ನಿಮಗೆ ದೃಷ್ಟಾಂತವಾಗಿದೆ. ಅದನ್ನು ಅದರ ಪಾಡಿಗೆ ಬಿಟ್ಟುಬಿಡಿ. ಅದು ಅಲ್ಲಾಹನ ಭೂಮಿಯಲ್ಲಿ ಮೇಯುತ್ತಿರಲಿ. ಅದಕ್ಕೆ ಯಾವುದೇ ತೊಂದರೆ ಕೊಡಬೇಡಿ. ಹಾಗೇನಾದರೂ ಆದರೆ ಯಾತನಾಮಯ ಶಿಕ್ಷೆಯು ನಿಮ್ಮನ್ನು ಹಿಡಿಯುವುದು.

وَإِلَىٰ ثَمُودَ أَخَاهُمْ صَٰلِحًاۗ قَالَ يَٰقَوْمِ ٱعْبُدُوا۟
ٱللَّهَ مَا لَكُم مِّنْ إِلَٰهٍ غَيْرُهُۥۖ قَدْ جَآءَتْكُم
بَيِّنَةٌ مِّن رَّبِّكُمْۖ هَٰذِهِۦ نَاقَةُ ٱللَّهِ لَكُمْ ءَايَةًۖ
فَذَرُوهَا تَأْكُلْ فِىٓ أَرْضِ ٱللَّهِۖ وَلَا تَمَسُّوهَا
بِسُوٓءٍ فَيَأْخُذَكُمْ عَذَابٌ أَلِيمٌ ٧٣

---

74. ಆದ್ ಗೋತ್ರದವರ ಬಳಿಕ ಅವನು ನಿಮ್ಮನ್ನು ಉತ್ತರಾಧಿಕಾರಿ-ಗಳನ್ನಾಗಿ ಮಾಡಿದ್ದನ್ನು ಸ್ಮರಿಸಿರಿ. ಅವನು ನಿಮಗೆ ಭೂಮಿಯಲ್ಲಿ ವಾಸ್ತವ್ಯವನ್ನು ಮಾಡಿಕೊಟ್ಟನು. ನೀವು ಭೂಮಿಯ ಸಮತಟ್ಟು ಪ್ರದೇಶಗಳಲ್ಲಿ ಸೌಧಗಳನ್ನು ನಿರ್ಮಿಸುತ್ತೀರಿ ಮತ್ತು ಬೆಟ್ಟಗಳಲ್ಲಿ ಮನೆಗಳನ್ನು ಕೊರೆಯುತ್ತೀರಿ. ಅಲ್ಲಾಹನ ಅನುಗ್ರಹಗಳನ್ನು ಸ್ಮರಿಸಿರಿ. ಭೂಮಿಯಲ್ಲಿ ಕಿಡಿಗೇಡಿತನ ಮಾಡುತ್ತಾ ಅಲ್ಲಾಹನ ಆಜ್ಞೋಲ್ಲಂಘನೆ ಮಾಡಬೇಡಿ."

وَٱذْكُرُوٓا۟ إِذْ جَعَلَكُمْ خُلَفَآءَ مِنۢ بَعْدِ عَادٍ
وَبَوَّأَكُمْ فِى ٱلْأَرْضِ تَتَّخِذُونَ مِن سُهُولِهَا
قُصُورًا وَتَنْحِتُونَ ٱلْجِبَالَ بُيُوتًاۖ فَٱذْكُرُوٓا۟ ءَالَآءَ
ٱللَّهِ وَلَا تَعْثَوْا۟ فِى ٱلْأَرْضِ مُفْسِدِينَ ٧٤

---

75. ಅವರ ಜನರಲ್ಲಿದ್ದ ಅಹಂಕಾರಿಗಳಾದ ಮುಖಂಡರು ಸ್ವಾಲಿಹರಲ್ಲಿ

قَالَ ٱلْمَلَأُ ٱلَّذِينَ ٱسْتَكْبَرُوا۟ مِن قَوْمِهِۦ لِلَّذِينَ

ವಿಶ್ವಾಸವಿಟ್ಟ ಬಲಹೀನರೊಡನೆ ಹೇಳಿದರು: "ಸ್ವಾಲಿಹರನ್ನು ಅವರ ಪರಿಪಾಲಕನ (ಅಲ್ಲಾಹನ) ಬಳಿಯಿಂದ ಕಳುಹಿಸಲಾಗಿದೆಯೆಂದು ನೀವು ನಿಜವಾಗಿಯೂ ನಂಬುತ್ತೀರಾ?" ಅವರು ಉತ್ತರಿಸಿದರು: "ಅವರೊಡನೆ ಏನು ಕಳುಹಿಸಲಾಗಿದೆಯೋ ಅದರಲ್ಲಿ ನಿಶ್ಚಯವಾಗಿಯೂ ನಾವು ವಿಶ್ವಾಸವಿಟ್ಟಿದ್ದೇವೆ."

ٱسۡتُضۡعِفُواْ لِمَنۡ ءَامَنَ مِنۡهُمۡ أَتَعۡلَمُونَ أَنَّ صَٰلِحٗا مُّرۡسَلٞ مِّن رَّبِّهِۦۚ قَالُوٓاْ إِنَّا بِمَآ أُرۡسِلَ بِهِۦ مُؤۡمِنُونَ ٧٥

---

76. ಅಹಂಕಾರಿಗಳು ಹೇಳಿದರು: "ನೀವು ಯಾವುದರಲ್ಲಿ ವಿಶ್ವಾಸವಿಟ್ಟಿದ್ದೀರೋ ಅದನ್ನು ನಾವು ಸಂಪೂರ್ಣವಾಗಿ ನಿಷೇಧಿಸಿದ್ದೇವೆ."

قَالَ ٱلَّذِينَ ٱسۡتَكۡبَرُوٓاْ إِنَّا بِٱلَّذِيٓ ءَامَنتُم بِهِۦ كَٰفِرُونَ ٧٦

---

77. ನಂತರ ಅವರು ಆ ಒಂಟೆಯನ್ನು ಕೊಂದು ಅವರ ಪರಿಪಾಲಕನ (ಅಲ್ಲಾಹನ) ಆಜ್ಞೆಯನ್ನು ಉಲ್ಲಂಘಿಸಿದರು. ಅವರು ಹೇಳಿದರು: "ಓ ಸ್ವಾಲಿಹ್! ನೀನು ನಮ್ಮನ್ನು ಹೆದರಿಸುತ್ತಿದ್ದ ಆ ಶಿಕ್ಷೆಯನ್ನು ತಂದು ತೋರಿಸು. ನೀನು (ನಿಜವಾಗಿಯೂ) ಸಂದೇಶವಾಹಕನಾಗಿದ್ದರೆ."

فَعَقَرُواْ ٱلنَّاقَةَ وَعَتَوۡاْ عَنۡ أَمۡرِ رَبِّهِمۡ وَقَالُواْ يَٰصَٰلِحُ ٱئۡتِنَا بِمَا تَعِدُنَآ إِن كُنتَ مِنَ ٱلۡمُرۡسَلِينَ ٧٧

---

78. ಆಗ ಭೂಕಂಪವು ಅವರನ್ನು ಹಿಡಿದುಕೊಂಡಿತು. ಅವರು ಅವರ ಮನೆಗಳಲ್ಲಿಯೇ ಬೋರಲು ಬಿದ್ದು ಸತ್ತರು.

فَأَخَذَتۡهُمُ ٱلرَّجۡفَةُ فَأَصۡبَحُواْ فِي دَارِهِمۡ جَٰثِمِينَ ٧٨

---

79. ಅವರಿಂದ ತಿರುಗಿ ನಡೆಯುತ್ತಾ ಸ್ವಾಲಿಹ್ ಹೇಳಿದರು: "ಓ ನನ್ನ ಜನರೇ! ನಿಶ್ಚಯವಾಗಿಯೂ ನಾನು ನನ್ನ ಪರಿಪಾಲಕನ (ಅಲ್ಲಾಹನ) ಸಂದೇಶವನ್ನು ನಿಮಗೆ ತಲುಪಿಸಿದ್ದೇನೆ ಮತ್ತು ನಿಮಗೆ ಪ್ರಾಮಾಣಿಕವಾಗಿ ಉಪದೇಶ ಮಾಡಿದ್ದೇನೆ. ಆದರೆ ನೀವು ಉಪದೇಶ ಮಾಡುವವರನ್ನು ಇಷ್ಟಪಡುತ್ತಿರಲಿಲ್ಲ."

فَتَوَلَّىٰ عَنۡهُمۡ وَقَالَ يَٰقَوۡمِ لَقَدۡ أَبۡلَغۡتُكُمۡ رِسَالَةَ رَبِّي وَنَصَحۡتُ لَكُمۡ وَلَٰكِن لَّا تُحِبُّونَ ٱلنَّٰصِحِينَ ٧٩

---

80. ಲೂತರನ್ನು ಕೂಡ (ನಾವು ಕಳುಹಿಸಿದೆವು). ಅವರು ತಮ್ಮ ಜನರೊಡನೆ ಹೇಳಿದ ಸಂದರ್ಭ: "ಸರ್ವಲೋಕಗಳ ಜನರಲ್ಲಿ ಈ ತನಕ ಯಾರೂ ಮಾಡದ ನೀಚಕೃತ್ಯವನ್ನು ನೀವು ಮಾಡುತ್ತಿದ್ದೀರಾ?

وَلُوطًا إِذۡ قَالَ لِقَوۡمِهِۦٓ أَتَأۡتُونَ ٱلۡفَٰحِشَةَ مَا سَبَقَكُم بِهَا مِنۡ أَحَدٖ مِّنَ ٱلۡعَٰلَمِينَ ٨٠

---

81. ನೀವು ಲೈಂಗಿಕ ತೃಷೆಯನ್ನು ತೀರಿಸಲು ಮಹಿಳೆಯರ ಬದಲು ಪುರುಷರ ಬಳಿಗೆ ಹೋಗುತ್ತಿದ್ದೀರಿ. ನೀವು ಎಲ್ಲೆ ಮೀರಿದ ಜನರಾಗಿದ್ದೀರಿ."

إِنَّكُمۡ لَتَأۡتُونَ ٱلرِّجَالَ شَهۡوَةٗ مِّن دُونِ ٱلنِّسَآءِۚ بَلۡ أَنتُمۡ قَوۡمٞ مُّسۡرِفُونَ ٨١

---

82. ಆಗ ಅವರ ಜನರ ಉತ್ತರವು, "ಇವರನ್ನು ನಿಮ್ಮ ಊರಿನಿಂದ ಓಡಿಸಿರಿ; ಇವರು ಪರಿಶುದ್ಧ ಜನರಾಗಿದ್ದಾರೆ!" ಎಂದು ಹೇಳುವುದಲ್ಲದೆ ಬೇರೇನೂ ಆಗಿರಲಿಲ್ಲ.

وَمَا كَانَ جَوَابَ قَوۡمِهِۦٓ إِلَّآ أَن قَالُوٓاْ أَخۡرِجُوهُم مِّن قَرۡيَتِكُمۡۖ إِنَّهُمۡ أُنَاسٞ يَتَطَهَّرُونَ ٨٢

---

83. ನಂತರ ನಾವು ಅವರನ್ನು ಮತ್ತು ಅವರ ಕುಟುಂಬವನ್ನು

فَأَنجَيۡنَٰهُ وَأَهۡلَهُۥٓ إِلَّا ٱمۡرَأَتَهُۥ كَانَتۡ مِنَ

| | |
|---|---|
| ٱلۡغَٰبِرِينَ ﴿٨٣﴾ | ರಕ್ಷಿಸಿದೆವು. ಅವರ ಪತ್ನಿಯ ಹೊರತು. ಆಕೆ ಶಿಕ್ಷೆಗೆ ಗುರಿಯಾದವರಲ್ಲಿ ಸೇರಿದವಳಾದಳು. |
| وَأَمۡطَرۡنَا عَلَيۡهِم مَّطَرٗاۖ فَٱنظُرۡ كَيۡفَ كَانَ عَٰقِبَةُ ٱلۡمُجۡرِمِينَ ﴿٨٤﴾ | 84. ನಾವು ಅವರ ಮೇಲೆ (ಕಲ್ಲಿನ) ಮಳೆಯನ್ನು ಸುರಿಸಿದೆವು. ಅಪರಾಧಿಗಳ ಅಂತ್ಯವು ಹೇಗಿತ್ತೆಂದು ನೋಡಿ. |
| وَإِلَىٰ مَدۡيَنَ أَخَاهُمۡ شُعَيۡبٗاۚ قَالَ يَٰقَوۡمِ ٱعۡبُدُواْ ٱللَّهَ مَا لَكُم مِّنۡ إِلَٰهٍ غَيۡرُهُۥۖ قَدۡ جَآءَتۡكُم بَيِّنَةٞ مِّن رَّبِّكُمۡۖ فَأَوۡفُواْ ٱلۡكَيۡلَ وَٱلۡمِيزَانَ وَلَا تَبۡخَسُواْ ٱلنَّاسَ أَشۡيَآءَهُمۡ وَلَا تُفۡسِدُواْ فِي ٱلۡأَرۡضِ بَعۡدَ إِصۡلَٰحِهَاۚ ذَٰلِكُمۡ خَيۡرٞ لَّكُمۡ إِن كُنتُم مُّؤۡمِنِينَ ﴿٨٥﴾ | 85. ಮದ್ಯನ್ ಗೋತ್ರದವರ ಬಳಿಗೆ ಅವರ ಸಹೋದರ ಶುಐಬರನ್ನು (ನಾವು ಕಳುಹಿಸಿದೆವು). ಅವರು ಹೇಳಿದರು: "ಓ ನನ್ನ ಜನರೇ! ಅಲ್ಲಾಹನನ್ನು ಆರಾಧಿಸಿರಿ. ನಿಮಗೆ ಅವನ ಹೊರತು ಬೇರೆ ದೇವರಿಲ್ಲ. ನಿಶ್ಚಯವಾಗಿಯೂ ನಿಮಗೆ ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಸ್ಪಷ್ಟ ಸಾಕ್ಷ್ಯಾಧಾರಗಳು ಬಂದಿವೆ. ನೀವು ಅಳತೆ ಮತ್ತು ತೂಕವನ್ನು ಪೂರ್ತಿಯಾಗಿ ನೀಡಿರಿ. ಜನರಿಗೆ ಅವರ ಸಾಮಗ್ರಿಗಳನ್ನು ಕಡಿಮೆಗೊಳಿಸಬೇಡಿ. ಭೂಮಿಯಲ್ಲಿ ಸುಧಾರಣೆ ಮಾಡಿದ ಬಳಿಕ ಅಲ್ಲಿ ಕಿಡಿಗೇಡಿತನ ಮಾಡಬೇಡಿ. ಇದು ನಿಮಗೆ ಉತ್ತಮವಾಗಿದೆ. ನೀವು ಸತ್ಯವಿಶ್ವಾಸಿಗಳಾಗಿದ್ದರೆ. |
| وَلَا تَقۡعُدُواْ بِكُلِّ صِرَٰطٖ تُوعِدُونَ وَتَصُدُّونَ عَن سَبِيلِ ٱللَّهِ مَنۡ ءَامَنَ بِهِۦ وَتَبۡغُونَهَا عِوَجٗاۚ وَٱذۡكُرُوٓاْ إِذۡ كُنتُمۡ قَلِيلٗا فَكَثَّرَكُمۡۖ وَٱنظُرُواْ كَيۡفَ كَانَ عَٰقِبَةُ ٱلۡمُفۡسِدِينَ ﴿٨٦﴾ | 86. ಅಲ್ಲಾಹನಲ್ಲಿ ವಿಶ್ವಾಸವಿಟ್ಟವರನ್ನು ಬೆದರಿಸಲು, ಜನರನ್ನು ಅಲ್ಲಾಹನ ಮಾರ್ಗದಿಂದ ತಡೆಯಲು ಮತ್ತು ಆ ಮಾರ್ಗದಲ್ಲಿ ವಕ್ರತೆಯನ್ನು ಹುಡುಕಲು ನೀವು ದಾರಿಗಳಲ್ಲಿ ಕುಳಿತುಕೊಳ್ಳಬೇಡಿ. ನೀವು ಕಡಿಮೆ ಸಂಖ್ಯೆಯಲ್ಲಿದ್ದಿರಿ. ನಂತರ ಅವನು ನಿಮ್ಮ ಸಂಖ್ಯೆಯನ್ನು ಹೆಚ್ಚಿಸಿದ್ದನ್ನು ಸ್ಮರಿಸಿರಿ. ಕಿಡಿಗೇಡಿಗಳ ಅಂತ್ಯವು ಹೇಗಿತ್ತೆಂದು ನೋಡಿ. |
| وَإِن كَانَ طَآئِفَةٞ مِّنكُمۡ ءَامَنُواْ بِٱلَّذِيٓ أُرۡسِلۡتُ بِهِۦ وَطَآئِفَةٞ لَّمۡ يُؤۡمِنُواْ فَٱصۡبِرُواْ حَتَّىٰ يَحۡكُمَ ٱللَّهُ بَيۡنَنَاۚ وَهُوَ خَيۡرُ ٱلۡحَٰكِمِينَ ﴿٨٧﴾ | 87. ನಿಮ್ಮಲ್ಲಿ ಒಂದು ಗುಂಪು ನನ್ನೊಂದಿಗೆ ಕಳುಹಿಸಲಾದ ಸಂದೇಶದಲ್ಲಿ ವಿಶ್ವಾಸವಿಟ್ಟು ಇನ್ನೊಂದು ಗುಂಪು ಅದರಲ್ಲಿ ವಿಶ್ವಾಸವಿಡದಿದ್ದರೆ—ಅಲ್ಲಾಹು ನಮ್ಮ ಮಧ್ಯೆ ತೀರ್ಪು ನೀಡುವ ತನಕ ತಾಳ್ಮೆಯಿಂದ ಕಾಯಿರಿ. ಅವನು ತೀರ್ಪು ನೀಡುವವರಲ್ಲಿ ಅತ್ಯುತ್ತಮನಾಗಿದ್ದಾನೆ." |
| ۞قَالَ ٱلۡمَلَأُ ٱلَّذِينَ ٱسۡتَكۡبَرُواْ مِن قَوۡمِهِۦ لَنُخۡرِجَنَّكَ يَٰشُعَيۡبُ وَٱلَّذِينَ ءَامَنُواْ مَعَكَ مِن قَرۡيَتِنَآ أَوۡ لَتَعُودُنَّ فِي مِلَّتِنَاۚ قَالَ أَوَلَوۡ كُنَّا كَٰرِهِينَ ﴿٨٨﴾ | 88. ಅವರ ಜನರಲ್ಲಿದ್ದ ಅಹಂಕಾರಿಗಳಾದ ಮುಖಂಡರು ಹೇಳಿದರು: "ಓ ಶುಐಬ್! ನಿಶ್ಚಯವಾಗಿಯೂ ನಿನ್ನನ್ನು ಮತ್ತು ನಿನ್ನ ಜೊತೆಗಿರುವ ಸತ್ಯವಿಶ್ವಾಸಿಗಳನ್ನು ನಾವು ನಮ್ಮ ಊರಿನಿಂದ ಓಡಿಸುವೆವು. ಅಥವಾ ನೀವು ನಮ್ಮ ಧರ್ಮಕ್ಕೆ ಮರಳಿ ಬರಬೇಕು." ಶುಐಬ್ ಹೇಳಿದರು: "ನಾವು ಅದನ್ನು (ನಿಮ್ಮ ಧರ್ಮವನ್ನು) ದ್ವೇಷಿಸುವವರಾಗಿದ್ದರೂ ಸಹ (ಮರಳಿ ಬರಬೇಕೇ)? |

89. ಅಲ್ಲಾಹು ನಮ್ಮನ್ನು ನಿಮ್ಮ ಧರ್ಮದಿಂದ ರಕ್ಷಿಸಿದ ಬಳಿಕ ನಾವು ಪುನಃ ಅದಕ್ಕೆ ಮರಳಿದರೆ, ನಾವು ಅಲ್ಲಾಹನ ಮೇಲೆ ಸುಳ್ಳು ಸೃಷ್ಟಿಸಿದವರಾಗುವೆವು. ನಿಮ್ಮ ಧರ್ಮಕ್ಕೆ ಮರಳಲು ನಮ್ಮಿಂದ ಸುತರಾಂ ಸಾಧ್ಯವಿಲ್ಲ. ನಮ್ಮ ಪರಿಪಾಲಕನಾದ ಅಲ್ಲಾಹು ಇಚ್ಛಿಸಿದರೆ ಹೊರತು. ನಮ್ಮ ಪರಿಪಾಲಕನ (ಅಲ್ಲಾಹನ) ಜ್ಞಾನವು ಎಲ್ಲಾ ವಿಷಯಗಳನ್ನು ಒಳಗೊಳ್ಳುವಷ್ಟು ವಿಶಾಲವಾಗಿದೆ. ನಾವು ಅಲ್ಲಾಹನಲ್ಲಿ ಭರವಸೆಯಿಟ್ಟಿದ್ದೇವೆ. ಓ ನಮ್ಮ ಪರಿಪಾಲಕನೇ! ನಮ್ಮ ಮತ್ತು ನಮ್ಮ ಜನರ ನಡುವೆ ಸತ್ಯವಾದ ತೀರ್ಪನ್ನು ನೀಡು. ತೀರ್ಪು ನೀಡುವವರಲ್ಲಿ ನೀನು ಅತ್ಯುತ್ತಮನಾಗಿರುವೆ."

قَدِ ٱفْتَرَيْنَا عَلَى ٱللَّهِ كَذِبًا إِنْ عُدْنَا فِى
مِلَّتِكُم بَعْدَ إِذْ نَجَّىٰنَا ٱللَّهُ مِنْهَا ۚ وَمَا يَكُونُ
لَنَآ أَن نَّعُودَ فِيهَآ إِلَّآ أَن يَشَآءَ ٱللَّهُ رَبُّنَا ۚ وَسِعَ
رَبُّنَا كُلَّ شَىْءٍ عِلْمًا ۚ عَلَى ٱللَّهِ تَوَكَّلْنَا ۚ رَبَّنَا
ٱفْتَحْ بَيْنَنَا وَبَيْنَ قَوْمِنَا بِٱلْحَقِّ وَأَنتَ خَيْرُ
ٱلْفَٰتِحِينَ ﴿٨٩﴾

90. ಅವರ ಜನರಲ್ಲಿದ್ದ ಸತ್ಯನಿಷೇಧಿ ಮುಖಂಡರು ಹೇಳಿದರು: "ನೀವು ಶುಐಬರ ಹಿಂದೆ ಹೋದರೆ ನಿಶ್ಚಯವಾಗಿಯೂ ನೀವು ನಷ್ಟಹೊಂದುವಿರಿ."

وَقَالَ ٱلْمَلَأُ ٱلَّذِينَ كَفَرُوا۟ مِن قَوْمِهِۦ لَئِنِ
ٱتَّبَعْتُمْ شُعَيْبًا إِنَّكُمْ إِذًا لَّخَٰسِرُونَ ﴿٩٠﴾

91. ಆಗ ಭೂಕಂಪವು ಅವರನ್ನು ಹಿಡಿದುಕೊಂಡಿತು. ಅವರು ತಮ್ಮ ಮನೆಗಳಲ್ಲಿಯೇ ಬೋರಲು ಬಿದ್ದು ಸತ್ತರು.

فَأَخَذَتْهُمُ ٱلرَّجْفَةُ فَأَصْبَحُوا۟ فِى دَارِهِمْ
جَٰثِمِينَ ﴿٩١﴾

92. ಶುಐಬರನ್ನು ನಿಷೇಧಿಸಿದವರ ಸ್ಥಿತಿಯು ಅವರು ಅಲ್ಲಿ ವಾಸಿಸಲೇ ಇಲ್ಲ ಎಂಬಂತಾಯಿತು. ಶುಐಬರನ್ನು ನಿಷೇಧಿಸಿದವರೇ ನಷ್ಟಹೊಂದಿದರು.

ٱلَّذِينَ كَذَّبُوا۟ شُعَيْبًا كَأَن لَّمْ يَغْنَوْا۟ فِيهَا ۚ ٱلَّذِينَ
كَذَّبُوا۟ شُعَيْبًا كَانُوا۟ هُمُ ٱلْخَٰسِرِينَ ﴿٩٢﴾

93. ಅವರಿಂದ ತಿರುಗಿ ನಡೆಯುತ್ತಾ ಶುಐಬ್ ಹೇಳಿದರು: "ಓ ನನ್ನ ಜನರೇ! ನಿಶ್ಚಯವಾಗಿಯೂ ನಾನು ನನ್ನ ಪರಿಪಾಲಕನ (ಅಲ್ಲಾಹನ) ಸಂದೇಶವನ್ನು ನಿಮಗೆ ತಲುಪಿಸಿದ್ದೇನೆ ಮತ್ತು ನಿಮಗೆ ಪ್ರಾಮಾಣಿಕವಾಗಿ ಉಪದೇಶ ಮಾಡಿದ್ದೇನೆ. ಹೀಗಿರುವಾಗ ಸತ್ಯವನ್ನು ನಿಷೇಧಿಸಿದ ಜನರಿಗಾಗಿ ನಾನೇಕೆ ಬೇಸರ ಮಾಡಿಕೊಳ್ಳಲಿ?"

فَتَوَلَّىٰ عَنْهُمْ وَقَالَ يَٰقَوْمِ لَقَدْ أَبْلَغْتُكُمْ
رِسَٰلَٰتِ رَبِّى وَنَصَحْتُ لَكُمْ ۖ فَكَيْفَ ءَاسَىٰ
عَلَىٰ قَوْمٍ كَٰفِرِينَ ﴿٩٣﴾

94. ನಾವು ಯಾವುದೇ ಊರಿಗೆ ಒಬ್ಬ ಪ್ರವಾದಿಯನ್ನು ಕಳುಹಿಸಿದಾಗ, (ಅವರು ಆ ಪ್ರವಾದಿಯನ್ನು ನಿಷೇಧಿಸಿದರೆ) ಅಲ್ಲಿನ ನಿವಾಸಿಗಳನ್ನು (ಬಡತನ ಮುಂತಾದ) ಕಷ್ಟಗಳಿಂದ ಮತ್ತು (ಅನಾರೋಗ್ಯ ಮುಂತಾದ) ತೊಂದರೆಗಳಿಂದ ಹಿಡಿಯುತ್ತಿದ್ದೆವು. ಅವರು ವಿನಯವಂತರಾಗುವುದಕ್ಕಾಗಿ.

وَمَآ أَرْسَلْنَا فِى قَرْيَةٍ مِّن نَّبِىٍّ إِلَّآ أَخَذْنَآ أَهْلَهَا
بِٱلْبَأْسَآءِ وَٱلضَّرَّآءِ لَعَلَّهُمْ يَضَّرَّعُونَ ﴿٩٤﴾

95. ನಂತರ ನಾವು ಕೆಡುಕಿನ ಸ್ಥಾನದಲ್ಲಿ (ಬಡತನ ಮತ್ತು ಅನಾರೋಗ್ಯದ ಸ್ಥಾನದಲ್ಲಿ) ಒಳಿತನ್ನು ನೀಡಿ ಬದಲಾಯಿಸುವೆವು. ಎಲ್ಲಿಯವರೆಗೆಂದರೆ, ಅವರು ಅಭಿವೃದ್ಧಿ ಪಡೆದು, "ನಮ್ಮ

ثُمَّ بَدَّلْنَا مَكَانَ ٱلسَّيِّئَةِ ٱلْحَسَنَةَ حَتَّىٰ عَفَوا۟
وَّقَالُوا۟ قَدْ مَسَّ ءَابَآءَنَا ٱلضَّرَّآءُ وَٱلسَّرَّآءُ

ಪೂರ್ವಜರಿಗೂ ಬಡತನ ಮತ್ತು ಅನಾರೋಗ್ಯ ಉಂಟಾಗಿತ್ತು" ಎಂದು ಹೇಳುವ ತನಕ. ಆಗ ನಾವು ಅವರಿಗೆ ತಿಳಿಯದ ರೀತಿಯಲ್ಲಿ ಹಠಾತ್ತನೆ ಅವರನ್ನು ಹಿಡಿದುಕೊಳ್ಳುವೆವು.

فَأَخَذۡنَٰهُم بَغۡتَةٗ وَهُمۡ لَا يَشۡعُرُونَ ٩٥

---

96. ಊರುಗಳ ನಿವಾಸಿಗಳು ಸತ್ಯವಿಶ್ವಾಸಿಗಳು ಮತ್ತು ದೇವಭಯವುಳ್ಳವರಾಗಿದ್ದರೆ, ನಾವು ಅವರಿಗೆ ಆಕಾಶದಿಂದ ಮತ್ತು ಭೂಮಿಯಿಂದ ಸಮೃದ್ಧಿಗಳನ್ನು ತೆರೆದುಕೊಡುತ್ತಿದ್ದೆವು. ಆದರೆ ಅವರು ಸತ್ಯನಿಷೇಧಿಗಳಾದರು. ಆದ್ದರಿಂದ ಅವರು ಮಾಡಿದ ದುಷ್ಕರ್ಮಗಳಿಂದಾಗಿ ನಾವು ಅವರನ್ನು ಹಿಡಿದೆವು.

وَلَوۡ أَنَّ أَهۡلَ ٱلۡقُرَىٰٓ ءَامَنُواْ وَٱتَّقَوۡاْ لَفَتَحۡنَا عَلَيۡهِم بَرَكَٰتٖ مِّنَ ٱلسَّمَآءِ وَٱلۡأَرۡضِ وَلَٰكِن كَذَّبُواْ فَأَخَذۡنَٰهُم بِمَا كَانُواْ يَكۡسِبُونَ ٩٦

---

97. ಆ ಊರುಗಳ ನಿವಾಸಿಗಳು—ಅವರು ರಾತ್ರಿ ಮಲಗಿರುವಾಗ ನಮ್ಮ ಶಿಕ್ಷೆಯು ಅವರ ಬಳಿಗೆ ಬರಲಾರದೆಂದು ನಿರ್ಭಯರಾಗಿದ್ದಾರೆಯೇ?

أَفَأَمِنَ أَهۡلُ ٱلۡقُرَىٰٓ أَن يَأۡتِيَهُم بَأۡسُنَا بَيَٰتٗا وَهُمۡ نَآئِمُونَ ٩٧

---

98. ಅಥವಾ ಅವರು ಹಗಲಿನಲ್ಲಿ ಆಟವಾಡುತ್ತಿರುವಾಗ ನಮ್ಮ ಶಿಕ್ಷೆಯು ಅವರ ಬಳಿಗೆ ಬರಲಾರದೆಂದು ನಿರ್ಭಯರಾಗಿದ್ದಾರೆಯೇ?

أَوَأَمِنَ أَهۡلُ ٱلۡقُرَىٰٓ أَن يَأۡتِيَهُم بَأۡسُنَا ضُحٗى وَهُمۡ يَلۡعَبُونَ ٩٨

---

99. ಅವರು ಅಲ್ಲಾಹನ ತಂತ್ರಗಾರಿಕೆಯ ಬಗ್ಗೆ ನಿರ್ಭಯರಾಗಿದ್ದಾರೆಯೇ? ನಷ್ಟಹೊಂದಿದ ಜನರ ಹೊರತು ಇನ್ನಾರೂ ಅಲ್ಲಾಹನ ತಂತ್ರಗಾರಿಕೆಯ ಬಗ್ಗೆ ನಿರ್ಭಯರಾಗುವುದಿಲ್ಲ.

أَفَأَمِنُواْ مَكۡرَ ٱللَّهِۚ فَلَا يَأۡمَنُ مَكۡرَ ٱللَّهِ إِلَّا ٱلۡقَوۡمُ ٱلۡخَٰسِرُونَ ٩٩

---

100. ಭೂಮಿಯಲ್ಲಿ ವಾಸವಾಗಿದ್ದವರು (ನಾಶವಾದ) ಬಳಿಕ ಅದರ ಉತ್ತರಾಧಿಕಾರಿಗಳಾಗಿ ಬಂದವರಿಗೆ—ನಾವು ಇಚ್ಛಿಸಿದರೆ ಅವರ ಪಾಪಗಳ ನಿಮಿತ್ತ ಅವರನ್ನು ಶಿಕ್ಷಿಸುವೆವು ಎಂಬ ಪ್ರಜ್ಞೆಯು ಸರಿದಾರಿಯನ್ನೇಕೆ ತೋರಿಸಲಿಲ್ಲ? ನಾವು ಅವರ ಹೃದಯಗಳಿಗೆ ಮೊಹರು ಹಾಕುವೆವು. ಆದ್ದರಿಂದ ಯಾವುದಕ್ಕೂ ಕಿವಿಗೊಡಲು ಅವರಿಗೆ ಸಾಧ್ಯವಾಗುವುದಿಲ್ಲ.

أَوَلَمۡ يَهۡدِ لِلَّذِينَ يَرِثُونَ ٱلۡأَرۡضَ مِنۢ بَعۡدِ أَهۡلِهَآ أَن لَّوۡ نَشَآءُ أَصَبۡنَٰهُم بِذُنُوبِهِمۡۚ وَنَطۡبَعُ عَلَىٰ قُلُوبِهِمۡ فَهُمۡ لَا يَسۡمَعُونَ ١٠٠

---

101. ಆ ಊರುಗಳ ಕೆಲವು ಸಮಾಚಾರಗಳನ್ನು ನಾವು ನಿಮಗೆ ವಿವರಿಸಿಕೊಡುವೆವು. ಅವರ ಸಂದೇಶವಾಹಕರುಗಳು ಸ್ಪಷ್ಟ ಸಾಕ್ಷ್ಯಾಧಾರಗಳೊಂದಿಗೆ ಅವರ ಬಳಿಗೆ ಬಂದಿದ್ದರು. ಆದರೂ ಅವರು ಮೊದಲು ಏನನ್ನು ನಿಷೇಧಿಸಿದ್ದರೋ ಅದರಲ್ಲಿ ಅವರು ವಿಶ್ವಾಸವಿಡಲಿಲ್ಲ. ಈ ರೀತಿ ಅಲ್ಲಾಹು ಸತ್ಯನಿಷೇಧಿಗಳ ಹೃದಯಗಳಿಗೆ ಮೊಹರು ಹಾಕುತ್ತಾನೆ.

تِلۡكَ ٱلۡقُرَىٰ نَقُصُّ عَلَيۡكَ مِنۡ أَنۢبَآئِهَاۚ وَلَقَدۡ جَآءَتۡهُمۡ رُسُلُهُم بِٱلۡبَيِّنَٰتِ فَمَا كَانُواْ لِيُؤۡمِنُواْ بِمَا كَذَّبُواْ مِن قَبۡلُۚ كَذَٰلِكَ يَطۡبَعُ ٱللَّهُ عَلَىٰ قُلُوبِ ٱلۡكَٰفِرِينَ ١٠١

---

102. ಅವರಲ್ಲಿ ಹೆಚ್ಚಿನವರು ಕರಾರು ಪಾಲಿಸುವುದನ್ನು ನಾವು ಕಂಡಿಲ್ಲ. ಅವರಲ್ಲಿ ಹೆಚ್ಚಿನವರನ್ನೂ ನಾವು ಅವಿಧೇಯರಾಗಿಯೇ

وَمَا وَجَدۡنَا لِأَكۡثَرِهِم مِّنۡ عَهۡدٖۖ وَإِن وَجَدۡنَآ أَكۡثَرَهُمۡ لَفَٰسِقِينَ ١٠٢

ಕಂಡಿದ್ದೇವೆ.

103. ನಂತರ ಅವರ ಬಳಿಕ ನಾವು ಮೂಸಾರನ್ನು ಫರೋಹ ಮತ್ತು ಅವನ ಜನರ ಬಳಿಗೆ ನಮ್ಮ ದೃಷ್ಟಾಂತಗಳೊಂದಿಗೆ ಕಳುಹಿಸಿದೆವು. ಆದರೆ ಅವರು ಅನ್ಯಾಯವಾಗಿ ಆ ದೃಷ್ಟಾಂತಗಳನ್ನು ನಿಷೇಧಿಸಿದರು. ಆ ಕಿಡಿಗೇಡಿಗಳ ಅಂತ್ಯವು ಹೇಗಿತ್ತೆಂದು ನೋಡಿ.

ثُمَّ بَعَثۡنَا مِنۢ بَعۡدِهِم مُّوسَىٰ بِـَٔايَٰتِنَآ إِلَىٰ فِرۡعَوۡنَ وَمَلَإِيْهِۦ فَظَلَمُواْ بِهَاۖ فَٱنظُرۡ كَيۡفَ كَانَ عَٰقِبَةُ ٱلۡمُفۡسِدِينَ ﴿١٠٣﴾

104. ಮೂಸಾ ಹೇಳಿದರು: “ಓ ಫರೋಹ! ನಿಶ್ಚಯವಾಗಿಯೂ ನಾನು ಸರ್ವಲೋಕಗಳ ಪರಿಪಾಲಕನ (ಅಲ್ಲಾಹನ) ಸಂದೇಶವಾಹಕನಾಗಿದ್ದೇನೆ.

وَقَالَ مُوسَىٰ يَٰفِرۡعَوۡنُ إِنِّي رَسُولٞ مِّن رَّبِّ ٱلۡعَٰلَمِينَ ﴿١٠٤﴾

105. ಅಲ್ಲಾಹನ ಮೇಲೆ ಸತ್ಯವನ್ನೇ ಹೊರತು ಬೇರೇನನ್ನೂ ಹೇಳಬಾರದೆಂಬ ನಿಷ್ಠೆ ನನಗಿದೆ. ನಿಮ್ಮ ಪರಿಪಾಲಕನ (ಅಲ್ಲಾಹನ) ಸ್ಪಷ್ಟ ಸಾಕ್ಷ್ಯಾಧಾರಗಳೊಂದಿಗೆ ನಾನು ನಿಮ್ಮ ಬಳಿಗೆ ಬಂದಿದ್ದೇನೆ. ಆದ್ದರಿಂದ ಇಸ್ರಾಯೇಲ್ ಮಕ್ಕಳನ್ನು ನನ್ನ ಜೊತೆಗೆ ಕಳುಹಿಸಿಕೊಡಿ.”

حَقِيقٌ عَلَىٰٓ أَن لَّآ أَقُولَ عَلَى ٱللَّهِ إِلَّا ٱلۡحَقَّۚ قَدۡ جِئۡتُكُم بِبَيِّنَةٖ مِّن رَّبِّكُمۡ فَأَرۡسِلۡ مَعِيَ بَنِيٓ إِسۡرَٰٓءِيلَ ﴿١٠٥﴾

106. ಫರೋಹ ಹೇಳಿದನು: “ನೀನು ದೃಷ್ಟಾಂತವನ್ನು ತಂದಿದ್ದರೆ ಅದನ್ನು ತೋರಿಸು. ನೀನು ಸತ್ಯವಂತರಲ್ಲಿ ಸೇರಿದ್ದರೆ.”

قَالَ إِن كُنتَ جِئۡتَ بِـَٔايَةٖ فَأۡتِ بِهَآ إِن كُنتَ مِنَ ٱلصَّٰدِقِينَ ﴿١٠٦﴾

107. ಆಗ ಮೂಸಾ ತಮ್ಮ ಕೋಲನ್ನು ಕೆಳಗೆಸೆದರು. ತಕ್ಷಣ ಅದು ಸ್ಪಷ್ಟವಾಗಿ ಕಾಣುವ ಒಂದು ಸರ್ಪವಾಗಿ ಮಾರ್ಪಟ್ಟಿತು.

فَأَلۡقَىٰ عَصَاهُ فَإِذَا هِيَ ثُعۡبَانٞ مُّبِينٞ ﴿١٠٧﴾

108. ಅವರು ತಮ್ಮ ಕೈಯನ್ನು (ಪಾರ್ಶ್ವದಿಂದ) ಹೊರತೆಗೆದರು. ಆಗ ಅದು ನೋಡುವವರಿಗೆ ಬೆಳ್ಳಗೆ ಹೊಳೆಯುವಂತೆ ಕಂಡಿತು.

وَنَزَعَ يَدَهُۥ فَإِذَا هِيَ بَيۡضَآءُ لِلنَّٰظِرِينَ ﴿١٠٨﴾

109. ಫರೋಹನ ಜನರಲ್ಲಿದ್ದ ಮುಖಂಡರು ಹೇಳಿದರು: “ನಿಜಕ್ಕೂ ಇವನೊಬ್ಬ ಅಗಾಧ ಜ್ಞಾನವಿರುವ ಮಾಟಗಾರನಾಗಿದ್ದಾನೆ.

قَالَ ٱلۡمَلَأُ مِن قَوۡمِ فِرۡعَوۡنَ إِنَّ هَٰذَا لَسَٰحِرٌ عَلِيمٞ ﴿١٠٩﴾

110. ನಿಮ್ಮನ್ನು ನಿಮ್ಮ ಊರಿನಿಂದ ಓಡಿಸುವುದು ಇವನ ಉದ್ದೇಶವಾಗಿದೆ. ಆದ್ದರಿಂದ ನೀವೇನು ಆದೇಶ ನೀಡುವಿರಿ?”

يُرِيدُ أَن يُخۡرِجَكُم مِّنۡ أَرۡضِكُمۡۖ فَمَاذَا تَأۡمُرُونَ ﴿١١٠﴾

111. ಅವರು (ಮುಖಂಡರು ಪರಸ್ಪರ ಸಮಾಲೋಚನೆ ಮಾಡಿ) ಹೇಳಿದರು: “ಇವನ ಮತ್ತು ಇವನ ಸಹೋದರನ ವಿಷಯವನ್ನು (ಸ್ವಲ್ಪ ಕಾಲ) ಮುಂದೂಡಿರಿ ಮತ್ತು (ಮಾಟಗಾರರನ್ನು) ಒಟ್ಟು ಸೇರಿಸಲು ನಗರಗಳಿಗೆ ಆಳುಗಳನ್ನು ಕಳುಹಿಸಿರಿ.

قَالُوٓاْ أَرۡجِهۡ وَأَخَاهُ وَأَرۡسِلۡ فِي ٱلۡمَدَآئِنِ حَٰشِرِينَ ﴿١١١﴾

112. ಅಗಾಧ ಜ್ಞಾನವಿರುವ ಎಲ್ಲಾ ಮಾಟಗಾರರನ್ನು ಅವರು ಕರೆದುಕೊಂಡು ಬರಲಿ.”

يَأۡتُوكَ بِكُلِّ سَٰحِرٍ عَلِيمٖ ﴿١١٢﴾

113. ಮಾಟಗಾರರು ಫರೋಹನ ಬಳಿಗೆ ಬಂದು ಕೇಳಿದರು: "ನಾವು ವಿಜೇತರಾದರೆ ನಿಶ್ಚಯವಾಗಿಯೂ ನಮಗೆ ಪ್ರತಿಫಲವಿದೆಯಲ್ಲವೇ?"

وَجَآءَ ٱلسَّحَرَةُ فِرۡعَوۡنَ قَالُوٓاْ إِنَّ لَنَا لَأَجۡرًا إِن كُنَّا نَحۡنُ ٱلۡغَٰلِبِينَ ١١٣

114. ಫರೋಹ ಹೇಳಿದನು: "ಹೌದು, ನಿಶ್ಚಯವಾಗಿಯೂ ನೀವು ನನ್ನ ಆಪ್ತರಲ್ಲಿ ಸೇರುವಿರಿ."

قَالَ نَعَمۡ وَإِنَّكُمۡ لَمِنَ ٱلۡمُقَرَّبِينَ ١١٤

115. ಮಾಟಗಾರರು ಹೇಳಿದರು: "ಓ ಮೂಸಾ! ಒಂದೋ ನೀವು (ಕೋಲನ್ನು) ಎಸೆಯಿರಿ. ಅಥವಾ ನಾವೇ (ಮೊದಲು) ಎಸೆಯುತ್ತೇವೆ."

قَالُواْ يَٰمُوسَىٰٓ إِمَّآ أَن تُلۡقِيَ وَإِمَّآ أَن نَّكُونَ نَحۡنُ ٱلۡمُلۡقِينَ ١١٥

116. ಮೂಸಾ ಹೇಳಿದರು: "ನೀವೇ ಎಸೆಯಿರಿ." ಅವರು (ಕೋಲುಗಳನ್ನು) ಎಸೆದಾಗ ಅವರು ಜನರ ಕಣ್ಣುಗಳಿಗೆ ಮಾಟ ಮಾಡಿ ಅವರನ್ನು ಭಯಭೀತಗೊಳಿಸಿದರು. ಅವರು ಬಹುದೊಡ್ಡ ಮಾಟಗಾರಿಕೆಯನ್ನು ಪ್ರದರ್ಶಿಸಿದ್ದರು.

قَالَ أَلۡقُواْۖ فَلَمَّآ أَلۡقَوۡاْ سَحَرُوٓاْ أَعۡيُنَ ٱلنَّاسِ وَٱسۡتَرۡهَبُوهُمۡ وَجَآءُو بِسِحۡرٍ عَظِيمٖ ١١٦

117. "ತಮ್ಮ ಕೋಲನ್ನು ಎಸೆಯಿರಿ" ಎಂದು ನಾವು ಮೂಸಾರಿಗೆ ದೇವವಾಣಿ ನೀಡಿದೆವು. ಆಗ ಅಗೋ ಅವರು ಕೃತಕವಾಗಿ ನಿರ್ಮಿಸಿದ (ಸರ್ಪಗಳನ್ನು) ಅದು ನುಂಗತೊಡಗಿತು.

۞وَأَوۡحَيۡنَآ إِلَىٰ مُوسَىٰٓ أَنۡ أَلۡقِ عَصَاكَۖ فَإِذَا هِيَ تَلۡقَفُ مَا يَأۡفِكُونَ ١١٧

118. ಸತ್ಯವು ಸಾಬೀತಾಯಿತು ಮತ್ತು ಅವರು ಮಾಡುತ್ತಿದ್ದ ಕೆಲಸಗಳೆಲ್ಲವೂ ನಿಷ್ಫಲವಾದವು.

فَوَقَعَ ٱلۡحَقُّ وَبَطَلَ مَا كَانُواْ يَعۡمَلُونَ ١١٨

119. ಅವರು ಅಲ್ಲಿಯೇ ಸೋತು ದಯನೀಯ ಸ್ಥಿತಿಯಲ್ಲಿ ಮರಳಿದರು.

فَغُلِبُواْ هُنَالِكَ وَٱنقَلَبُواْ صَٰغِرِينَ ١١٩

120. ಮಾಟಗಾರರು (ಅಲ್ಲಾಹನಿಗೆ) ಸಾಷ್ಟಾಂಗ ಮಾಡಿದರು.

وَأُلۡقِيَ ٱلسَّحَرَةُ سَٰجِدِينَ ١٢٠

121. ಅವರು ಹೇಳಿದರು: "ನಾವು ಸರ್ವಲೋಕಗಳ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ವಿಶ್ವಾಸವಿಟ್ಟಿದ್ದೇವೆ.

قَالُوٓاْ ءَامَنَّا بِرَبِّ ٱلۡعَٰلَمِينَ ١٢١

122. ಮೂಸಾ ಮತ್ತು ಹಾರೂನರ ಪರಿಪಾಲಕನಲ್ಲಿ."

رَبِّ مُوسَىٰ وَهَٰرُونَ ١٢٢

123. ಫರೋಹ ಹೇಳಿದನು: "ನಾನು ಅಪ್ಪಣೆ ಕೊಡುವ ಮೊದಲೇ ನೀವು ವಿಶ್ವಾಸವಿಟ್ಟಿರಾ? ನಿಶ್ಚಯವಾಗಿಯೂ ಇದು ನೀವು ನಗರದ ನಿವಾಸಿಗಳನ್ನು ಅಲ್ಲಿಂದ ಓಡಿಸಲು ಮಾಡಿದ ಪಿತೂರಿಯಾಗಿದೆ. ಸದ್ಯವೇ ನೀವು ತಿಳಿಯುವಿರಿ.

قَالَ فِرۡعَوۡنُ ءَامَنتُم بِهِۦ قَبۡلَ أَنۡ ءَاذَنَ لَكُمۡۖ إِنَّ هَٰذَا لَمَكۡرٞ مَّكَرۡتُمُوهُ فِي ٱلۡمَدِينَةِ لِتُخۡرِجُواْ مِنۡهَآ أَهۡلَهَاۖ فَسَوۡفَ تَعۡلَمُونَ ١٢٣

124. ಖಂಡಿತವಾಗಿಯೂ ನಾನು ನಿಮ್ಮ ಕೈಗಳನ್ನು ಮತ್ತು ಕಾಲುಗಳನ್ನು ವಿರುದ್ಧ ದಿಕ್ಕಿನಿಂದ ಕತ್ತರಿಸಿ, ನಂತರ ನಿಮ್ಮೆಲ್ಲರನ್ನೂ ಶಿಲುಬೆಗೇರಿಸುವೆನು."

لَأُقَطِّعَنَّ أَيۡدِيَكُمۡ وَأَرۡجُلَكُم مِّنۡ خِلَٰفٖ ثُمَّ لَأُصَلِّبَنَّكُمۡ أَجۡمَعِينَ ١٢٤

125. ಮಾಟಗಾರರು ಹೇಳಿದರು: "ನಿಶ್ಚಯವಾಗಿಯೂ ನಾವು ನಮ್ಮ ಪರಿಪಾಲಕನ (ಅಲ್ಲಾಹನ) ಬಳಿಗೆ ಮರಳುವೆವು.

قَالُوٓاْ إِنَّآ إِلَىٰ رَبِّنَا مُنقَلِبُونَ ١٢٥

126. ನಮ್ಮ ಪರಿಪಾಲಕನ (ಅಲ್ಲಾಹನ) ದೃಷ್ಟಾಂತಗಳು ನಮ್ಮ ಬಳಿಗೆ ಬಂದಾಗ ನಾವು ಅದರಲ್ಲಿ ವಿಶ್ವಾಸವಿಟ್ಟೆವು ಎಂಬುದರ ಹೊರತು ಬೇರೆ ಯಾವ ಅಪರಾಧಕ್ಕಾಗಿ ನೀವು ನಮ್ಮ ಮೇಲೆ ಸಿಟ್ಟಾಗಿದ್ದೀರಿ? ಓ ನಮ್ಮ ಪರಿಪಾಲಕನೇ! ನಮಗೆ ಸಹನಾಶಕ್ತಿ-ಯನ್ನು ಸುರಿಸಿಕೊಡು ಮತ್ತು ಮುಸಲ್ಮಾನರಾಗಿರುವ ಸ್ಥಿತಿಯಲ್ಲಿ ನಮ್ಮನ್ನು ಮೃತಪಡಿಸು."

وَمَا تَنقِمُ مِنَّآ إِلَّآ أَنۡ ءَامَنَّا بِـَٔايَٰتِ رَبِّنَا لَمَّا جَآءَتۡنَاۚ رَبَّنَآ أَفۡرِغۡ عَلَيۡنَا صَبۡرٗا وَتَوَفَّنَا مُسۡلِمِينَ ١٢٦

127. ಫರೋಹನ ಜನರಲ್ಲಿದ್ದ ಮುಖಂಡರು ಹೇಳಿದರು: "ಭೂಮಿಯಲ್ಲಿ ಕಿಡಿಗೇಡಿತನ ಮಾಡಲು ಮತ್ತು ನಿಮ್ಮನ್ನು ಹಾಗೂ ನಿಮ್ಮ ದೇವರುಗಳನ್ನು ಬಹಿಷ್ಕರಿಸಲು ನೀವು ಮೂಸಾ ಮತ್ತು ಅವನ ಜನರನ್ನು (ಸ್ವತಂತ್ರವಾಗಿ) ಬಿಟ್ಟುಬಿಡುತ್ತೀರಾ?" ಫರೋಹ ಹೇಳಿದನು: "ನಾವು ಅವರ (ಇಸ್ರಾಯೇಲರ) ಗಂಡುಮಕ್ಕಳ ಕತ್ತು ಕೊಯ್ಯುವೆವು ಮತ್ತು ಅವರ ಹೆಣ್ಣು ಮಕ್ಕಳನ್ನು ಜೀವಂತ ಬಿಡುವೆವು. ನಿಶ್ಚಯವಾಗಿಯೂ ನಮಗೆ ಅವರ ಮೇಲೆ ಸರ್ವಾಧಿಕಾರವಿದೆ."

وَقَالَ ٱلۡمَلَأُ مِن قَوۡمِ فِرۡعَوۡنَ أَتَذَرُ مُوسَىٰ وَقَوۡمَهُۥ لِيُفۡسِدُواْ فِي ٱلۡأَرۡضِ وَيَذَرَكَ وَءَالِهَتَكَۚ قَالَ سَنُقَتِّلُ أَبۡنَآءَهُمۡ وَنَسۡتَحۡيِۦ نِسَآءَهُمۡ وَإِنَّا فَوۡقَهُمۡ قَٰهِرُونَ ١٢٧

128. ಮೂಸಾ ತಮ್ಮ ಜನರಿಗೆ ಹೇಳಿದರು: "ನೀವು ಅಲ್ಲಾಹನಲ್ಲಿ ಸಹಾಯ ಬೇಡಿರಿ ಮತ್ತು ತಾಳ್ಮೆಯಿಂದಿರಿ. ನಿಶ್ಚಯವಾಗಿಯೂ ಭೂಮಿ ಅಲ್ಲಾಹನಿಗೆ ಸೇರಿದ್ದು. ಅವನ ದಾಸರಲ್ಲಿ ಅವನು ಇಚ್ಛಿಸುವವರಿಗೆ ಅವನು ಅದನ್ನು ಉತ್ತರಾಧಿಕಾರವಾಗಿ ನೀಡುತ್ತಾನೆ. ಉತ್ತಮ ಅಂತ್ಯವಿರುವುದು ದೇವಭಯವುಳ್ಳವರಿಗೆ ಮಾತ್ರ."

قَالَ مُوسَىٰ لِقَوۡمِهِ ٱسۡتَعِينُواْ بِٱللَّهِ وَٱصۡبِرُوٓاْۖ إِنَّ ٱلۡأَرۡضَ لِلَّهِ يُورِثُهَا مَن يَشَآءُ مِنۡ عِبَادِهِۦۖ وَٱلۡعَٰقِبَةُ لِلۡمُتَّقِينَ ١٢٨

129. ಅವರು ಹೇಳಿದರು: "ನೀವು ನಮ್ಮ ಬಳಿಗೆ (ಸಂದೇಶವಾಹಕರಾಗಿ) ಬರುವ ಮೊದಲು ಮತ್ತು ನೀವು ನಮ್ಮ ಬಳಿಗೆ (ಸಂದೇಶವಾಹಕರಾಗಿ) ಬಂದ ಬಳಿಕವೂ ನಾವು ಹಿಂಸೆಗೆ ಗುರಿಯಾಗಿದ್ದೇವೆ." ಮೂಸಾ ಹೇಳಿದರು: "ನಿಮ್ಮ ಪರಿಪಾಲಕನು (ಅಲ್ಲಾಹು) ನಿಮ್ಮ ವೈರಿಯನ್ನು ನಾಶ ಮಾಡಿ, ನಿಮ್ಮನ್ನು ಭೂಮಿಯಲ್ಲಿ ಉತ್ತರಾಧಿಕಾರಿಗಳನ್ನಾಗಿ ಮಾಡಬಹುದು. ನಂತರ ನೀವು ಹೇಗೆ ಕಾರ್ಯವೆಸಗುತ್ತೀರಿ ಎಂದು ಅವನು ನೋಡುವನು."

قَالُوٓاْ أُوذِينَا مِن قَبۡلِ أَن تَأۡتِيَنَا وَمِنۢ بَعۡدِ مَا جِئۡتَنَاۚ قَالَ عَسَىٰ رَبُّكُمۡ أَن يُهۡلِكَ عَدُوَّكُمۡ وَيَسۡتَخۡلِفَكُمۡ فِي ٱلۡأَرۡضِ فَيَنظُرَ كَيۡفَ تَعۡمَلُونَ ١٢٩

130. ಫರೋಹನ ಜನರನ್ನು ನಾವು ಬರಗಾಲ ಮತ್ತು ಬೆಳೆಗಳ ಅಭಾವದಿಂದ ಹಿಡಿದೆವು. ಅವರು ಜಾಗೃತರಾಗುವುದಕ್ಕಾಗಿ.

وَلَقَدۡ أَخَذۡنَآ ءَالَ فِرۡعَوۡنَ بِٱلسِّنِينَ وَنَقۡصٖ مِّنَ ٱلثَّمَرَٰتِ لَعَلَّهُمۡ يَذَّكَّرُونَ ١٣٠

131. ಅವರಿಗೆ ಒಳಿತುಂಟಾದರೆ, "ಇದು ನಮ್ಮ ಸಿಗಬೇಕಾದ ಹಕ್ಕು" ಎಂದು ಅವರು ಹೇಳುತ್ತಾರೆ. ಅವರಿಗೆ ಕೆಡುಕು ಬಾಧಿಸಿದರೆ ಮೂಸಾ ಮತ್ತು ಅವರ ಅನುಯಾಯಿಗಳನ್ನು ಅಪಶಕುನವಾಗಿ ಕಾಣುತ್ತಾರೆ. ತಿಳಿಯಿರಿ! ಅವರ ಶಕುನವು ಅಲ್ಲಾಹನ ಬಳಿಯಲ್ಲಿದೆ. ಆದರೆ ಅವರಲ್ಲಿ ಹೆಚ್ಚಿನವರು ತಿಳಿಯುವುದಿಲ್ಲ.

فَإِذَا جَآءَتۡهُمُ ٱلۡحَسَنَةُ قَالُواْ لَنَا هَٰذِهِۦۖ وَإِن تُصِبۡهُمۡ سَيِّئَةٞ يَطَّيَّرُواْ بِمُوسَىٰ وَمَن مَّعَهُۥٓۗ أَلَآ إِنَّمَا طَٰٓئِرُهُمۡ عِندَ ٱللَّهِ وَلَٰكِنَّ أَكۡثَرَهُمۡ لَا يَعۡلَمُونَ ١٣١

132. ಅವರು ಹೇಳಿದರು: "ನೀನು ನಮ್ಮನ್ನು ಮೋಡಿ ಮಾಡಲು ಯಾವುದೇ ದೃಷ್ಟಾಂತವನ್ನು ತಂದರೂ ನಾವು ನಿನ್ನಲ್ಲಿ ವಿಶ್ವಾಸವಿಡುವುದಿಲ್ಲ."

وَقَالُواْ مَهۡمَا تَأۡتِنَا بِهِۦ مِنۡ ءَايَةٖ لِّتَسۡحَرَنَا بِهَا فَمَا نَحۡنُ لَكَ بِمُؤۡمِنِينَ ١٣٢

133. ಆಗ ನಾವು ಅವರ ವಿರುದ್ಧ ಪ್ರವಾಹ, ಮಿಡತೆ, ಹೇನು, ಕಪ್ಪೆಗಳು ಮತ್ತು ರಕ್ತವನ್ನು ಸ್ಪಷ್ಟ ದೃಷ್ಟಾಂತಗಳಾಗಿ ಕಳುಹಿಸಿದೆವು. ಆದರೆ ಅವರು ಅಹಂಕಾರದಿಂದ ವರ್ತಿಸಿದರು. ಅವರು ಅಪರಾಧವೆಸಗಿದ ಜನರಾಗಿದ್ದರು.

فَأَرۡسَلۡنَا عَلَيۡهِمُ ٱلطُّوفَانَ وَٱلۡجَرَادَ وَٱلۡقُمَّلَ وَٱلضَّفَادِعَ وَٱلدَّمَ ءَايَٰتٖ مُّفَصَّلَٰتٖ فَٱسۡتَكۡبَرُواْ وَكَانُواْ قَوۡمٗا مُّجۡرِمِينَ ١٣٣

134. ಶಿಕ್ಷೆಯು ಅವರ ಮೇಲೆರಗಿದಾಗ ಅವರು ಹೇಳಿದರು: "ಓ ಮೂಸಾ! ನಿಮ್ಮ ಪರಿಪಾಲಕನು (ಅಲ್ಲಾಹು) ನಿಮಗೆ ನೀಡಿದ ಭರವಸೆಯಂತೆ ನೀವು ಅವನನ್ನು ಕರೆದು ಪ್ರಾರ್ಥಿಸಿರಿ. ನೀವು ಈ ಶಿಕ್ಷೆಯನ್ನು ನಮ್ಮಿಂದ ನಿವಾರಿಸಿದರೆ ನಾವು ಖಂಡಿತ ವಿಶ್ವಾಸವಿಡುವೆವು ಮತ್ತು ಇಸ್ರಾಯೇಲ್ ಮಕ್ಕಳನ್ನು ಖಂಡಿತ ನಿಮ್ಮ ಜೊತೆಗೆ ಕಳುಹಿಸಿಕೊಡುವೆವು."

وَلَمَّا وَقَعَ عَلَيۡهِمُ ٱلرِّجۡزُ قَالُواْ يَٰمُوسَى ٱدۡعُ لَنَا رَبَّكَ بِمَا عَهِدَ عِندَكَۖ لَئِن كَشَفۡتَ عَنَّا ٱلرِّجۡزَ لَنُؤۡمِنَنَّ لَكَ وَلَنُرۡسِلَنَّ مَعَكَ بَنِيٓ إِسۡرَٰٓءِيلَ ١٣٤

135. ಆದರೆ ಅವರು ತಲುಪಬೇಕಾದ ಒಂದು ಅವಧಿಯ ತನಕ ನಾವು ಅವರಿಂದ ಶಿಕ್ಷೆಯನ್ನು ನಿವಾರಿಸಿದಾಗ, ಅಗೋ ಅವರು ಮಾತು ತಪ್ಪುತ್ತಿದ್ದಾರೆ.

فَلَمَّا كَشَفۡنَا عَنۡهُمُ ٱلرِّجۡزَ إِلَىٰٓ أَجَلٍ هُم بَٰلِغُوهُ إِذَا هُمۡ يَنكُثُونَ ١٣٥

136. ಆದ್ದರಿಂದ ನಾವು ಅವರಿಂದ ಪ್ರತೀಕಾರ ಪಡೆದೆವು ಮತ್ತು ಅವರನ್ನು ಸಮುದ್ರದಲ್ಲಿ ಮುಳುಗಿಸಿ ಬಿಟ್ಟೆವು. ಏಕೆಂದರೆ, ಅವರು ನಮ್ಮ ವಚನಗಳನ್ನು ನಿಷೇಧಿಸಿದ್ದರು ಮತ್ತು ಅವುಗಳ ಬಗ್ಗೆ ನಿರ್ಲಕ್ಷ್ಯರಾಗಿದ್ದರು.

فَٱنتَقَمۡنَا مِنۡهُمۡ فَأَغۡرَقۡنَٰهُمۡ فِي ٱلۡيَمِّ بِأَنَّهُمۡ كَذَّبُواْ بِـَٔايَٰتِنَا وَكَانُواْ عَنۡهَا غَٰفِلِينَ ١٣٦

137. ದಬ್ಬಾಳಿಕೆಗೆ ಗುರಿಯಾದ ಜನರನ್ನು (ಇಸ್ರಾಯೇಲ್ ಮಕ್ಕಳನ್ನು) ನಾವು ಸಮೃದ್ಧಗೊಳಿಸಿದ ಭೂಮಿಯ ಪೂರ್ವ ಮತ್ತು ಪಶ್ಚಿಮ ಭಾಗಗಳ ಉತ್ತರಾಧಿಕಾರಿಗಳಾಗಿ ಮಾಡಿದೆವು. ಇಸ್ರಾಯೇಲ್ ಮಕ್ಕಳು ತಾಳ್ಮೆ ತೋರಿದ ಕಾರಣ ಅವರಿಗೆ ಸಂಬಂಧಿಸಿದ ನಿಮ್ಮ ಪರಿಪಾಲಕನ (ಅಲ್ಲಾಹನ) ಉತ್ತಮ ವಚನವು ನೆರವೇರಿತು. ಫರೋಹ ಮತ್ತು ಅವನ ಜನರು ನಿರ್ಮಿಸಿದ್ದನ್ನು ಮತ್ತು ಅವರು

وَأَوۡرَثۡنَا ٱلۡقَوۡمَ ٱلَّذِينَ كَانُواْ يُسۡتَضۡعَفُونَ مَشَٰرِقَ ٱلۡأَرۡضِ وَمَغَٰرِبَهَا ٱلَّتِي بَٰرَكۡنَا فِيهَاۖ وَتَمَّتۡ كَلِمَتُ رَبِّكَ ٱلۡحُسۡنَىٰ عَلَىٰ بَنِيٓ إِسۡرَٰٓءِيلَ بِمَا صَبَرُواْۖ وَدَمَّرۡنَا مَا كَانَ يَصۡنَعُ فِرۡعَوۡنُ وَقَوۡمُهُۥ وَمَا كَانُواْ يَعۡرِشُونَ ١٣٧

ಎತ್ತರಿಸಿ ಕಟ್ಟಿದ್ದನ್ನು ನಾವು ನಾಶ ಮಾಡಿದೆವು.

**138.** ನಾವು ಇಸ್ರಾಯೇಲ್ ಮಕ್ಕಳನ್ನು ಸಮುದ್ರ ದಾಟಿಸಿ ರಕ್ಷಿಸಿದೆವು. ಅಲ್ಲಿ ಅವರು ವಿಗ್ರಹಗಳ ಮುಂದೆ ಧ್ಯಾನಮಗ್ನರಾಗಿ ಕುಳಿತಿದ್ದ ಜನರನ್ನು ಕಂಡರು. ಅವರು ಹೇಳಿದರು: "ಓ ಮೂಸಾ! ಇವರಿಗೆ ದೇವರುಗಳು ಇರುವಂತೆ ನಮಗೂ ಒಬ್ಬ ದೇವನನ್ನು ಮಾಡಿಕೊಡಿ." ಮೂಸಾ ಹೇಳಿದರು: "ನಿಶ್ಚಯವಾಗಿಯೂ ನೀವು ವಿವೇಕರಹಿತ ಜನರಾಗಿದ್ದೀರಿ.

وَجَٰوَزۡنَا بِبَنِيٓ إِسۡرَٰٓءِيلَ ٱلۡبَحۡرَ فَأَتَوۡاْ عَلَىٰ قَوۡمٖ يَعۡكُفُونَ عَلَىٰٓ أَصۡنَامٖ لَّهُمۡۚ قَالُواْ يَٰمُوسَى ٱجۡعَل لَّنَآ إِلَٰهٗا كَمَا لَهُمۡ ءَالِهَةٞۚ قَالَ إِنَّكُمۡ قَوۡمٞ تَجۡهَلُونَ ١٣٨

**139.** ನಿಶ್ಚಯವಾಗಿಯೂ ಇವರು ಮಾಡುತ್ತಿರುವ ಈ ಕಾರ್ಯವು (ವಿಗ್ರಹಾರಾಧನೆ) ನಾಶವಾಗಿ ಹೋಗುತ್ತದೆ ಮತ್ತು ಇವರು ಮಾಡುತ್ತಿರುವ ಈ ಕಾರ್ಯವು ಆಧಾರರಹಿತವಾಗಿದೆ."

إِنَّ هَٰٓؤُلَآءِ مُتَبَّرٞ مَّا هُمۡ فِيهِ وَبَٰطِلٞ مَّا كَانُواْ يَعۡمَلُونَ ١٣٩

**140.** ಮೂಸಾ ಕೇಳಿದರು: "ಅಲ್ಲಾಹು ನಿಮ್ಮನ್ನು ಸರ್ವಲೋಕಗಳ ಜನರಿಗಿಂತ ಶ್ರೇಷ್ಠಗೊಳಿಸಿರುವಾಗ, ನಾನು ಅವನಲ್ಲದ ಬೇರೆ ದೇವರನ್ನು ನಿಮಗಾಗಿ ಹುಡುಕಿ ತರಬೇಕೇ?"

قَالَ أَغَيۡرَ ٱللَّهِ أَبۡغِيكُمۡ إِلَٰهٗا وَهُوَ فَضَّلَكُمۡ عَلَى ٱلۡعَٰلَمِينَ ١٤٠

**141.** ನಿಮಗೆ ಕಠೋರ ಹಿಂಸೆ ನೀಡುತ್ತಿದ್ದ, ನಿಮ್ಮ ಗಂಡು ಮಕ್ಕಳ ಕತ್ತು ಕೊಯ್ಯುತ್ತಿದ್ದ ಮತ್ತು ನಿಮ್ಮ ಹೆಣ್ಣು ಮಕ್ಕಳನ್ನು ಜೀವಂತ ಬಿಡುತ್ತಿದ್ದ ಫರೋಹನ ಜನರಿಂದ ನಾವು ನಿಮ್ಮನ್ನು ರಕ್ಷಿಸಿದ ಸಂದರ್ಭ(ವನ್ನು ಸ್ಮರಿಸಿ). ನಿಶ್ಚಯವಾಗಿಯೂ ಅದರಲ್ಲಿ (ನಿಮ್ಮನ್ನು ರಕ್ಷಿಸಿದ್ದರಲ್ಲಿ) ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಮಹಾ ಪರೀಕ್ಷೆಯಿತ್ತು.

وَإِذۡ أَنجَيۡنَٰكُم مِّنۡ ءَالِ فِرۡعَوۡنَ يَسُومُونَكُمۡ سُوٓءَ ٱلۡعَذَابِ يُقَتِّلُونَ أَبۡنَآءَكُمۡ وَيَسۡتَحۡيُونَ نِسَآءَكُمۡۚ وَفِي ذَٰلِكُم بَلَآءٞ مِّن رَّبِّكُمۡ عَظِيمٞ ١٤١

**142.** ನಾವು ಮೂಸಾರಿಗೆ ಮೂವತ್ತು ರಾತ್ರಿಗಳನ್ನು ವಾಗ್ದಾನ ಮಾಡಿದೆವು ಮತ್ತು ಅದಕ್ಕೆ ಹತ್ತು ಸೇರಿಸಿ ಪೂರ್ಣಗೊಳಿಸಿದೆವು. ಹೀಗೆ ಮೂಸಾರ ಪರಿಪಾಲಕನು (ಅಲ್ಲಾಹು) ನಿಶ್ಚಯಿಸಿದ ನಲ್ವತ್ತು ರಾತ್ರಿಗಳ ಅವಧಿಯು ಪೂರ್ಣವಾಯಿತು. ಮೂಸಾ ತಮ್ಮ ಸಹೋದರ ಹಾರೂನರಿಗೆ ಹೇಳಿದರು: "ನನ್ನ ಜನರಿಗೆ ನನ್ನ ಪ್ರತಿನಿಧಿಯಾಗಿರು. ಒಳಿತನ್ನು ಮಾಡು. ಕಿಡಿಗೇಡಿಗಳ ಮಾರ್ಗವನ್ನು ಹಿಂಬಾಲಿಸಬೇಡ."

۞وَوَٰعَدۡنَا مُوسَىٰ ثَلَٰثِينَ لَيۡلَةٗ وَأَتۡمَمۡنَٰهَا بِعَشۡرٖ فَتَمَّ مِيقَٰتُ رَبِّهِۦٓ أَرۡبَعِينَ لَيۡلَةٗۚ وَقَالَ مُوسَىٰ لِأَخِيهِ هَٰرُونَ ٱخۡلُفۡنِي فِي قَوۡمِي وَأَصۡلِحۡ وَلَا تَتَّبِعۡ سَبِيلَ ٱلۡمُفۡسِدِينَ ١٤٢

**143.** ನಮ್ಮ ನಿಶ್ಚಿತ ಸಮಯಕ್ಕೆ ಮೂಸಾ ಬಂದಾಗ ಮತ್ತು ಅವರ ಪರಿಪಾಲಕನು (ಅಲ್ಲಾಹು) ಅವರೊಡನೆ ಮಾತನಾಡಿದಾಗ ಅವರು ಹೇಳಿದರು: "ಓ ನನ್ನ ಪರಿಪಾಲಕನೇ! ನಿನ್ನನ್ನು ನನಗೆ ತೋರಿಸಿಕೊಡು. ನಾನು ನಿನ್ನನ್ನು ನೋಡಬೇಕು." ಅಲ್ಲಾಹು ಹೇಳಿದನು: "ನಿಮಗೆ ನನ್ನನ್ನು ನೋಡಲು ಸಾಧ್ಯವಿಲ್ಲ. ಬದಲಿಗೆ, ನೀವು ಆ ಬೆಟ್ಟವನ್ನು ನೋಡಿರಿ. ಅದು ಅದರ ಸ್ಥಳದಲ್ಲಿಯೇ

وَلَمَّا جَآءَ مُوسَىٰ لِمِيقَٰتِنَا وَكَلَّمَهُۥ رَبُّهُۥ قَالَ رَبِّ أَرِنِيٓ أَنظُرۡ إِلَيۡكَۚ قَالَ لَن تَرَىٰنِي وَلَٰكِنِ ٱنظُرۡ إِلَى ٱلۡجَبَلِ فَإِنِ ٱسۡتَقَرَّ مَكَانَهُۥ فَسَوۡفَ تَرَىٰنِيۚ فَلَمَّا تَجَلَّىٰ رَبُّهُۥ لِلۡجَبَلِ جَعَلَهُۥ دَكّٗا وَخَرَّ مُوسَىٰ صَعِقٗاۚ فَلَمَّآ أَفَاقَ قَالَ سُبۡحَٰنَكَ

ಕದಲದೆ ನಿಂತರೆ ನೀವು ನನ್ನನ್ನು ನೋಡುವಿರಿ.” ನಂತರ ಅವರ ಪರಿಪಾಲಕನು (ಅಲ್ಲಾಹು) ಆ ಬೆಟ್ಟಕ್ಕೆ ತನ್ನನ್ನು ಪ್ರಕ-ಟಗೊಳಿಸಿದಾಗ, ಅವನ ತೇಜಸ್ಸು ಅದನ್ನು ನುಚ್ಚುನೂರು ಮಾಡಿತು. ಮೂಸಾ ಪ್ರಜ್ಞೆ ತಪ್ಪಿ ಬಿದ್ದರು. ನಂತರ ಪ್ರಜ್ಞೆ ಬಂದಾಗ ಅವರು ಹೇಳಿದರು: “ನೀನು ಪರಿಶುದ್ಧನು. ನಾನು ನಿನ್ನ ಬಳಿಗೆ ಪಶ್ಚಾತ್ತಾಪದಿಂದ ಮರಳಿದ್ದೇನೆ. ನಾನು ಸತ್ಯವಿಶ್ವಾಸಿಗಳಲ್ಲಿ ಮೊದಲಿಗನಾಗಿದ್ದೇನೆ.”

تُبۡتُ إِلَيۡكَ وَأَنَا۠ أَوَّلُ ٱلۡمُؤۡمِنِينَ ١٤٣

---

144. ಅಲ್ಲಾಹು ಹೇಳಿದನು: “ಓ ಮೂಸಾ! ನಿಶ್ಚಯವಾಗಿಯೂ ಮನುಷ್ಯರ ಪೈಕಿ ನಾನು ನಿಮ್ಮನ್ನು ನನ್ನ ಸಂದೇಶಗಳಿಂದ ಮತ್ತು ನನ್ನ (ನೇರ) ಮಾತಿನಿಂದ ಆರಿಸಿದ್ದೇನೆ. ಆದ್ದರಿಂದ ನಾನು ನಿಮಗೆ ನೀಡಿದ್ದನ್ನು ಬಿಗಿಯಾಗಿ ಹಿಡಿದುಕೊಳ್ಳಿ ಮತ್ತು ಕೃತಜ್ಞರಾಗಿರುವ ಜನರಲ್ಲಿ ಸೇರಿಕೊಳ್ಳಿ.”

قَالَ يَٰمُوسَىٰٓ إِنِّي ٱصۡطَفَيۡتُكَ عَلَى ٱلنَّاسِ
بِرِسَٰلَٰتِي وَبِكَلَٰمِي فَخُذۡ مَآ ءَاتَيۡتُكَ وَكُن مِّنَ
ٱلشَّٰكِرِينَ ١٤٤

---

145. ನಾವು ಅವರಿಗೆ (ಮೂಸಾರಿಗೆ) ಹಲಗೆಗಳಲ್ಲಿ ಎಲ್ಲವನ್ನೂ—ಹಿತೋಪದೇಶ ಮತ್ತು ಎಲ್ಲಾ ವಿಷಯಗಳ ವಿವರಣೆಯನ್ನು—ಬರೆದುಕೊಟ್ಟೆವು. (ನಾವು ಹೇಳಿದೆವು): “ಇದನ್ನು ಬಿಗಿಯಾಗಿ ಹಿಡಿದುಕೊಳ್ಳಿ ಮತ್ತು ಇದರಲ್ಲಿರುವ ಉತ್ತಮ ವಿಷಯಗಳನ್ನು ಸ್ವೀಕರಿಸಲು ನಿಮ್ಮ ಜನರಿಗೆ ಆದೇಶಿಸಿರಿ. ದುಷ್ಕರ್ಮಿಗಳ ವಾಸ್ತವ್ಯವನ್ನು ನಾನು ಸದ್ಯವೇ ನಿಮಗೆ ತೋರಿಸಿಕೊಡುವೆನು.”

وَكَتَبۡنَا لَهُۥ فِي ٱلۡأَلۡوَاحِ مِن كُلِّ شَيۡءٖ مَّوۡعِظَةٗ
وَتَفۡصِيلٗا لِّكُلِّ شَيۡءٖ فَخُذۡهَا بِقُوَّةٖ وَأۡمُرۡ
قَوۡمَكَ يَأۡخُذُواْ بِأَحۡسَنِهَاۚ سَأُوْرِيكُمۡ دَارَ
ٱلۡفَٰسِقِينَ ١٤٥

---

146. ಭೂಮಿಯಲ್ಲಿ ಅನ್ಯಾಯವಾಗಿ ಅಹಂಕಾರಪಡುವವರನ್ನು ನಾನು ನನ್ನ ವಚನಗಳಿಂದ ತಿರುಗಿಸಿಬಿಡುವೆನು. ಅವರು ದೃಷ್ಟಾಂ-ತಗಳೆಲ್ಲವನ್ನು ನೋಡಿದರೂ ಸಹ ಅದರಲ್ಲಿ ವಿಶ್ವಾಸವಿಡುವು-ದಿಲ್ಲ. ಅವರು ಒಳಿತಿನ ಮಾರ್ಗವನ್ನು ಕಂಡರೆ ಅದನ್ನು ತಮ್ಮ ಮಾರ್ಗವಾಗಿ ಸ್ವೀಕರಿಸುವುದಿಲ್ಲ. ಅವರು ಕೆಟ್ಟ ಮಾರ್ಗವನ್ನು ಕಂಡರೆ ಅದನ್ನು ತಮ್ಮ ಮಾರ್ಗವಾಗಿ ಸ್ವೀಕರಿಸುತ್ತಾರೆ. ಅದೇಕೆಂದರೆ, ಅವರು ನಮ್ಮ ವಚನಗಳನ್ನು ನಿಷೇಧಿಸುತ್ತಿದ್ದರು ಮತ್ತು ಅವುಗಳ ಬಗ್ಗೆ ನಿರ್ಲಕ್ಷ್ಯರಾಗಿದ್ದರು.

سَأَصۡرِفُ عَنۡ ءَايَٰتِيَ ٱلَّذِينَ يَتَكَبَّرُونَ فِي
ٱلۡأَرۡضِ بِغَيۡرِ ٱلۡحَقِّ وَإِن يَرَوۡاْ كُلَّ ءَايَةٖ لَّا
يُؤۡمِنُواْ بِهَا وَإِن يَرَوۡاْ سَبِيلَ ٱلرُّشۡدِ لَا يَتَّخِذُوهُ
سَبِيلٗا وَإِن يَرَوۡاْ سَبِيلَ ٱلۡغَيِّ يَتَّخِذُوهُ سَبِيلٗاۚ
ذَٰلِكَ بِأَنَّهُمۡ كَذَّبُواْ بِـَٔايَٰتِنَا وَكَانُواْ عَنۡهَا
غَٰفِلِينَ ١٤٦

---

147. ನಮ್ಮ ವಚನಗಳನ್ನು ಮತ್ತು ಪರಲೋಕದ ಭೇಟಿಯನ್ನು ನಿಷೇಧಿಸಿದವರು ಯಾರೋ—ಅವರ ಕರ್ಮಗಳು ನಿಷ್ಫಲವಾಗಿವೆ. ಅವರಿಗೆ ಅವರು ಮಾಡಿದ ಕರ್ಮಗಳ ಪ್ರತಿಫಲವನ್ನಲ್ಲದೆ ಬೇರೇನಾದರೂ ನೀಡಲಾಗುವುದೇ?

وَٱلَّذِينَ كَذَّبُواْ بِـَٔايَٰتِنَا وَلِقَآءِ ٱلۡأٓخِرَةِ حَبِطَتۡ
أَعۡمَٰلُهُمۡۚ هَلۡ يُجۡزَوۡنَ إِلَّا مَا كَانُواْ يَعۡمَلُونَ ١٤٧

---

148. ಮೂಸಾರ ನಿರ್ಗಮನದ ಬಳಿಕ ಅವರ ಜನರು (ಇಸ್ರಾಯೇಲ್ ಮಕ್ಕಳು) ತಮ್ಮ ಆಭರಣಗಳಿಂದ ಧ್ವನಿ ಹೊರಡಿಸುವ ಒಂದು

وَٱتَّخَذَ قَوۡمُ مُوسَىٰ مِنۢ بَعۡدِهِۦ مِنۡ حُلِيِّهِمۡ
عِجۡلٗا جَسَدٗا لَّهُۥ خُوَارٌۚ أَلَمۡ يَرَوۡاْ أَنَّهُۥ لَا

يُكَلِّمُهُمۡ وَلَا يَهۡدِيهِمۡ سَبِيلًاۘ ٱتَّخَذُوهُ وَكَانُواْ
ظَٰلِمِينَ ١٤٨

ಕರುವಿನ ರೂಪವನ್ನು (ದೇವರಾಗಿ) ಮಾಡಿಕೊಂಡರು. ಅದು ಅವರೊಡನೆ ಮಾತನಾಡುವುದಿಲ್ಲ ಮತ್ತು ಅವರಿಗೆ ಸನ್ಮಾರ್ಗ ತೋರಿಸುವುದಿಲ್ಲವೆಂದು ಅವರಿಗೆ ತಿಳಿದಿಲ್ಲವೇ? ಅವರು ಅದನ್ನು (ದೇವರಾಗಿ) ಮಾಡಿಕೊಂಡರು. ಅವರು ಅಕ್ರಮಿಗಳಾಗಿದ್ದರು.

---

وَلَمَّا سُقِطَ فِيٓ أَيۡدِيهِمۡ وَرَأَوۡاْ أَنَّهُمۡ قَدۡ ضَلُّواْ
قَالُواْ لَئِن لَّمۡ يَرۡحَمۡنَا رَبُّنَا وَيَغۡفِرۡ لَنَا لَنَكُونَنَّ
مِنَ ٱلۡخَٰسِرِينَ ١٤٩

149. (ನಂತರ ತಮ್ಮ ತಪ್ಪನ್ನು ಅರಿತು) ಅವರು ಮರುಗಿದಾಗ, ಮತ್ತು ಅವರು ದಾರಿತಪ್ಪಿದ್ದಾರೆಂದು ಅವರಿಗೆ ಮನವರಿಕೆಯಾದಾಗ, ಅವರು ಹೇಳಿದರು: "ನಮ್ಮ ಪರಿಪಾಲಕನು (ಅಲ್ಲಾಹು) ನಮಗೆ ದಯೆ ತೋರದಿದ್ದರೆ ಮತ್ತು ನಮ್ಮನ್ನು ಕ್ಷಮಿಸದಿದ್ದರೆ, ನಿಶ್ಚಯವಾಗಿಯೂ ನಾವು ನಷ್ಟಹೊಂದಿದವರಲ್ಲಿ ಸೇರುವೆವು."

---

وَلَمَّا رَجَعَ مُوسَىٰٓ إِلَىٰ قَوۡمِهِۦ غَضۡبَٰنَ أَسِفٗا
قَالَ بِئۡسَمَا خَلَفۡتُمُونِي مِنۢ بَعۡدِيٓۖ أَعَجِلۡتُمۡ
أَمۡرَ رَبِّكُمۡۖ وَأَلۡقَى ٱلۡأَلۡوَاحَ وَأَخَذَ بِرَأۡسِ أَخِيهِ
يَجُرُّهُۥٓ إِلَيۡهِۚ قَالَ ٱبۡنَ أُمَّ إِنَّ ٱلۡقَوۡمَ ٱسۡتَضۡعَفُونِي
وَكَادُواْ يَقۡتُلُونَنِي فَلَا تُشۡمِتۡ بِيَ ٱلۡأَعۡدَآءَ وَلَا
تَجۡعَلۡنِي مَعَ ٱلۡقَوۡمِ ٱلظَّٰلِمِينَ ١٥٠

150. ಮೂಸಾ ತಮ್ಮ ಜನರ ಬಳಿಗೆ ಮರಳಿ ಬಂದಾಗ—ಅವರು ಕೋಪ ಮತ್ತು ಬೇಸರದಿಂದ ಹೇಳಿದರು: "ನನ್ನ ನಿರ್ಗಮನದ ಬಳಿಕ ನೀವು ಮಾಡಿದ ಕೃತ್ಯವು ಅತ್ಯಂತ ಹೇಯವಾಗಿದೆ. ನಿಮ್ಮ ಪರಿಪಾಲಕನ (ಅಲ್ಲಾಹನ) ಆಜ್ಞೆ ಬರುವುದಕ್ಕೆ ಮೊದಲೇ ನೀವು ಅವಸರಪಟ್ಟಿರಾ?" ಅವರು ಹಲಗೆಗಳನ್ನು ಎಸೆದು ಸಹೋದರನ ತಲೆಗೂದಲನ್ನು ಹಿಡಿದು ಎಳೆದರು. ಅವರು (ಸಹೋದರ) ಹೇಳಿದರು: "ನನ್ನ ತಾಯಿಯ ಮಗನೇ! ನಿಶ್ಚಯವಾಗಿಯೂ ಈ ಜನರು ನನ್ನನ್ನು ದುರ್ಬಲನೆಂದು ಪರಿಗಣಿಸಿದರು. ಅವರು ನನ್ನನ್ನು ಇನ್ನೇನು ಕೊಲ್ಲುವುದರಲ್ಲಿದ್ದರು. ನನ್ನ ಮೇಲೆ ಹಲ್ಲೆ ಮಾಡಿ ವೈರಿಗಳಿಗೆ ಸಂತಸವಾಗುವಂತೆ ಮಾಡಬೇಡ. ಅಕ್ರಮಿಗಳ ಸಾಲಿಗೆ ನನ್ನನ್ನು ಕೂಡ ಸೇರಿಸಿ ಬಿಡಬೇಡ."

---

قَالَ رَبِّ ٱغۡفِرۡ لِي وَلِأَخِي وَأَدۡخِلۡنَا فِي رَحۡمَتِكَۖ
وَأَنتَ أَرۡحَمُ ٱلرَّٰحِمِينَ ١٥١

151. ಮೂಸಾ ಹೇಳಿದರು: "ಓ ನನ್ನ ಪರಿಪಾಲಕನೇ, ನನ್ನನ್ನು ಮತ್ತು ನನ್ನ ಸಹೋದರನನ್ನು ಕ್ಷಮಿಸು. ನಮ್ಮನ್ನು ನಿನ್ನ ದಯೆಯಲ್ಲಿ ಸೇರಿಸು. ನೀನು ದಯಾಳುಗಳಲ್ಲೇ ಅತ್ಯಧಿಕ ದಯಾಳುವಾಗಿರುವೆ."

---

إِنَّ ٱلَّذِينَ ٱتَّخَذُواْ ٱلۡعِجۡلَ سَيَنَالُهُمۡ غَضَبٞ مِّن
رَّبِّهِمۡ وَذِلَّةٞ فِي ٱلۡحَيَوٰةِ ٱلدُّنۡيَاۚ وَكَذَٰلِكَ نَجۡزِي
ٱلۡمُفۡتَرِينَ ١٥٢

152. ಕರುವನ್ನು ದೇವರಾಗಿ ಸ್ವೀಕರಿಸಿದವರು ಯಾರೋ—ಅವರು ತಮ್ಮ ಪರಿಪಾಲಕನ (ಅಲ್ಲಾಹನ) ಕೋಪವನ್ನು ಮತ್ತು ಇಹಲೋಕ ಜೀವನದಲ್ಲಿ ನಿಂದ್ಯತೆಯನ್ನು (ಬಳುವಳಿಯಾಗಿ) ಪಡೆಯುವರು. ಸುಳ್ಳು ಆರೋಪಿಸುವವರಿಗೆ ನಾವು ಈ ರೀತಿ ಪ್ರತಿಫಲವನ್ನು ನೀಡುವೆವು.

---

وَٱلَّذِينَ عَمِلُواْ ٱلسَّيِّـَٔاتِ ثُمَّ تَابُواْ مِنۢ بَعۡدِهَا
وَءَامَنُوٓاْ إِنَّ رَبَّكَ مِنۢ بَعۡدِهَا لَغَفُورٞ رَّحِيمٞ ١٥٣

153. ಆದರೆ ಪಾಪ ಮಾಡಿದ ಬಳಿಕ ಪಶ್ಚಾತ್ತಾಪಪಡುವವರು ಮತ್ತು ವಿಶ್ವಾಸವಿಡುವವರು ಯಾರೋ—ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಅದರ ನಂತರವೂ ಕ್ಷಮಿಸುವವನು

ಮತ್ತು ದಯೆ ತೋರುವವನಾಗಿದ್ದಾನೆ.

---

154. ಮೂಸಾರ ಕೋಪ ತಣ್ಣಗಾದಾಗ ಅವರು ಹಲಗೆಗಳನ್ನು ಎತ್ತಿಕೊಂಡರು. ಅದರಲ್ಲಿರುವ ಉಲ್ಲೇಖಗಳಲ್ಲಿ ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಭಯಪಡುವ ಜನರಿಗೆ ಸನ್ಮಾರ್ಗ ಮತ್ತು ದಯೆಯಿತ್ತು.

وَلَمَّا سَكَتَ عَن مُّوسَى ٱلْغَضَبُ أَخَذَ ٱلْأَلْوَاحَ ۖ
وَفِى نُسْخَتِهَا هُدًى وَرَحْمَةٌ لِّلَّذِينَ هُمْ لِرَبِّهِمْ
يَرْهَبُونَ ﴿١٥٤﴾

---

155. ಮೂಸಾ ತಮ್ಮ ಜನರಲ್ಲಿ ಸೇರಿದ ಎಪ್ಪತ್ತು ಪುರುಷರನ್ನು ನಮ್ಮ ನಿಶ್ಚಿತ ಸಮಯಕ್ಕಾಗಿ ಆರಿಸಿದರು. ಆದರೆ ಭೀಕರ ಕಂಪನವು ಅವರನ್ನು ಹಿಡಿದಾಗ ಮೂಸಾ ಹೇಳಿದರು: "ಓ ನನ್ನ ಪರಿಪಾಲಕನೇ! ನೀನು ಇಚ್ಛಿಸಿದರೆ ಇದಕ್ಕಿಂತ ಮೊದಲೇ ಅವರನ್ನು ಮತ್ತು ನನ್ನನ್ನು ನಾಶ ಮಾಡಬಹುದಿತ್ತು. ನಮ್ಮಲ್ಲಿನ ಅವಿವೇಕಿಗಳು ಮಾಡಿದ ಕೃತ್ಯಕ್ಕೆ ನೀನು ನಮ್ಮನ್ನು ನಾಶ ಮಾಡುವೆಯಾ? ಇದು ನಿನ್ನ ಪರೀಕ್ಷೆಯಾಗಿದೆ. ಇದರ ಮೂಲಕ ನೀನು ಇಚ್ಛಿಸುವವರನ್ನು ನೀನು ದಾರಿತಪ್ಪಿಸುತ್ತೀ ಮತ್ತು ನೀನು ಇಚ್ಛಿಸುವವರಿಗೆ ಸನ್ಮಾರ್ಗ ತೋರಿಸುತ್ತೀ. ನೀನೇ ನಮ್ಮ ರಕ್ಷಕ. ನಮ್ಮನ್ನು ಕ್ಷಮಿಸು ಮತ್ತು ನಮಗೆ ದಯೆ ತೋರು. ನೀನು ಕ್ಷಮಿಸುವವರಲ್ಲಿ ಅತ್ಯುತ್ತಮನಾಗಿರುವೆ.

وَٱخْتَارَ مُوسَىٰ قَوْمَهُۥ سَبْعِينَ رَجُلًا لِّمِيقَٰتِنَا ۖ
فَلَمَّآ أَخَذَتْهُمُ ٱلرَّجْفَةُ قَالَ رَبِّ لَوْ شِئْتَ
أَهْلَكْتَهُم مِّن قَبْلُ وَإِيَّٰىَ ۖ أَتُهْلِكُنَا بِمَا فَعَلَ
ٱلسُّفَهَآءُ مِنَّآ ۖ إِنْ هِىَ إِلَّا فِتْنَتُكَ تُضِلُّ بِهَا مَن
تَشَآءُ وَتَهْدِى مَن تَشَآءُ ۖ أَنتَ وَلِيُّنَا فَٱغْفِرْ لَنَا
وَٱرْحَمْنَا ۖ وَأَنتَ خَيْرُ ٱلْغَٰفِرِينَ ﴿١٥٥﴾

---

156. ಇಹಲೋಕದಲ್ಲಿ ಮತ್ತು ಪರಲೋಕದಲ್ಲಿ ನಮಗೆ ಒಳಿತನ್ನು ದಾಖಲಿಸು. ನಿಶ್ಚಯವಾಗಿಯೂ ನಾವು ನಿನ್ನ ಕಡೆಗೆ ಮರಳಿದ್ದೇವೆ." ಅಲ್ಲಾಹು ಹೇಳಿದನು: "ನಾನು ಇಚ್ಛಿಸುವವರನ್ನು ನಾನು ಶಿಕ್ಷಿಸುವೆನು. ಆದರೆ ನನ್ನ ದಯೆ ಎಲ್ಲಾ ವಸ್ತುಗಳನ್ನು ಆವರಿಸಿಕೊಂಡಿದೆ. ದೇವಭಯದಿಂದ ಜೀವಿಸುವ, ಝಕಾತ್ ನೀಡುವ ಮತ್ತು ನಮ್ಮ ವಚನಗಳಲ್ಲಿ ವಿಶ್ವಾಸವಿಡುವ ಜನರಿಗೆ ನಾನು ಅದನ್ನು (ದಯೆಯನ್ನು) ದಾಖಲಿಸುವೆನು.

وَٱكْتُبْ لَنَا فِى هَٰذِهِ ٱلدُّنْيَا حَسَنَةً وَفِى
ٱلْءَاخِرَةِ إِنَّا هُدْنَآ إِلَيْكَ ۚ قَالَ عَذَابِىٓ أُصِيبُ
بِهِۦ مَنْ أَشَآءُ ۖ وَرَحْمَتِى وَسِعَتْ كُلَّ شَىْءٍ ۚ
فَسَأَكْتُبُهَا لِلَّذِينَ يَتَّقُونَ وَيُؤْتُونَ ٱلزَّكَوٰةَ
وَٱلَّذِينَ هُم بِـَٔايَٰتِنَا يُؤْمِنُونَ ﴿١٥٦﴾

---

157. ಅವರು ಯಾರೆಂದರೆ, ತಮ್ಮ ಬಳಿಯಿರುವ ತೌರಾತ್ ಮತ್ತು ಇಂಜೀಲ್‌ನಲ್ಲಿ ಉಲ್ಲೇಖವಿರುವುದಾಗಿ ಕಾಣುವ ಅನಕ್ಷರಸ್ಥ ಪ್ರವಾದಿಯಾದ ಸಂದೇಶವಾಹಕರನ್ನು (ಪ್ರವಾದಿ ಮುಹಮ್ಮದರನ್ನು) ಅನುಸರಿಸುವವರು. ಆ ಪ್ರವಾದಿ ಅವರಿಗೆ ಒಳಿತನ್ನು ಆದೇಶಿಸುತ್ತಾರೆ ಮತ್ತು ಕೆಡುಕನ್ನು ವಿರೋಧಿಸುತ್ತಾರೆ. ಅವರಿಗೆ ಉತ್ತಮ ವಸ್ತುಗಳನ್ನು ಅನುಮತಿಸುತ್ತಾರೆ ಮತ್ತು ಕೆಟ್ಟ ವಸ್ತುಗಳನ್ನು ನಿಷೇಧಿಸುತ್ತಾರೆ. ಅವರ ಭಾರವನ್ನು ಕೆಳಗಿಳಿಸಿ ಅವರ ಮೇಲೆ ಹೊರಿಸಲಾಗಿದ್ದ ಸಂಕೋಲೆಗಳನ್ನು ಕಳಚುತ್ತಾರೆ. ಆ ಪ್ರವಾದಿಯಲ್ಲಿ ವಿಶ್ವಾಸವಿಡುವವರು, ಅವರನ್ನು

ٱلَّذِينَ يَتَّبِعُونَ ٱلرَّسُولَ ٱلنَّبِىَّ ٱلْأُمِّىَّ ٱلَّذِى
يَجِدُونَهُۥ مَكْتُوبًا عِندَهُمْ فِى ٱلتَّوْرَىٰةِ
وَٱلْإِنجِيلِ يَأْمُرُهُم بِٱلْمَعْرُوفِ وَيَنْهَىٰهُمْ عَنِ
ٱلْمُنكَرِ وَيُحِلُّ لَهُمُ ٱلطَّيِّبَٰتِ وَيُحَرِّمُ عَلَيْهِمُ
ٱلْخَبَٰٓئِثَ وَيَضَعُ عَنْهُمْ إِصْرَهُمْ وَٱلْأَغْلَٰلَ
ٱلَّتِى كَانَتْ عَلَيْهِمْ ۚ فَٱلَّذِينَ ءَامَنُوا۟ بِهِۦ وَعَزَّرُوهُ
وَنَصَرُوهُ وَٱتَّبَعُوا۟ ٱلنُّورَ ٱلَّذِىٓ أُنزِلَ مَعَهُۥٓ ۙ
أُو۟لَٰٓئِكَ هُمُ ٱلْمُفْلِحُونَ ﴿١٥٧﴾

ಬೆಂಬಲಿಸುವವರು, ಸಹಾಯ ಮಾಡುವವರು ಮತ್ತು ಅವರೊಂದಿಗೆ ಅವತೀರ್ಣವಾದ ಬೆಳಕನ್ನು ಅನುಸರಿಸುವವರು ಯಾರೋ—ಅವರೇ ಯಶಸ್ವಿಯಾದವರು.

---

158. ಹೇಳಿರಿ: “ಓ ಮನುಷ್ಯರೇ! ನಿಶ್ಚಯವಾಗಿಯೂ ನಾನು ನಿಮ್ಮೆಲ್ಲರ ಬಳಿಗೆ (ಕಳುಹಿಸಲಾದ) ಅಲ್ಲಾಹನ ಸಂದೇಶವಾಹಕನಾಗಿದ್ದೇನೆ. ಅಂದರೆ, ಭೂಮ್ಯಾಕಾಶಗಳ ಆಧಿಪತ್ಯವು ಯಾರಿಗೆ ಸೇರಿದ್ದೋ ಅವನ (ಸಂದೇಶವಾಹಕ). ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ಅವನು ಜೀವ ಮತ್ತು ಮರಣವನ್ನು ನೀಡುತ್ತಾನೆ.” ಆದ್ದರಿಂದ ನೀವು ಅಲ್ಲಾಹನಲ್ಲಿ ಮತ್ತು ಅವನ ಸಂದೇಶವಾಹಕರಲ್ಲಿ—ಅಂದರೆ ಅಲ್ಲಾಹನಲ್ಲಿ ಮತ್ತು ಅವನ ವಚನಗಳಲ್ಲಿ ವಿಶ್ವಾಸವಿಡುವ ಆ ಅನಕ್ಷರಸ್ಥ ಪ್ರವಾದಿಯಲ್ಲಿ ವಿಶ್ವಾಸವಿಟ್ಟು ಅವರನ್ನು ಅನುಸರಿಸಿರಿ. ನೀವು ಸನ್ಮಾರ್ಗ ಪಡೆಯುವುದಕ್ಕಾಗಿ.

قُلْ يَـٰٓأَيُّهَا ٱلنَّاسُ إِنِّى رَسُولُ ٱللَّهِ إِلَيْكُمْ
جَمِيعًا ٱلَّذِى لَهُۥ مُلْكُ ٱلسَّمَـٰوَٰتِ وَٱلْأَرْضِ ۖ
لَآ إِلَـٰهَ إِلَّا هُوَ يُحْىِۦ وَيُمِيتُ ۖ فَـَٔامِنُوا۟ بِٱللَّهِ
وَرَسُولِهِ ٱلنَّبِىِّ ٱلْأُمِّىِّ ٱلَّذِى يُؤْمِنُ بِٱللَّهِ
وَكَلِمَـٰتِهِۦ وَٱتَّبِعُوهُ لَعَلَّكُمْ تَهْتَدُونَ ﴿١٥٨﴾

---

159. ಮೂಸಾರ ಜನರಲ್ಲಿ ಒಂದು ಪಂಗಡವಿದೆ. ಅವರು ಸತ್ಯದ ಆಧಾರದಲ್ಲಿ ಮಾರ್ಗದರ್ಶನ ಮಾಡುತ್ತಾರೆ ಮತ್ತು ಅದರ ಆಧಾರದಲ್ಲಿ ನ್ಯಾಯವನ್ನು ಸ್ಥಾಪಿಸುತ್ತಾರೆ.

وَمِن قَوْمِ مُوسَىٰٓ أُمَّةٌ يَهْدُونَ بِٱلْحَقِّ وَبِهِۦ
يَعْدِلُونَ ﴿١٥٩﴾

---

160. ನಾವು ಅವರನ್ನು ಹನ್ನೆರಡು ವಂಶಗಳ ಗೋತ್ರಗಳನ್ನಾಗಿ ವಿಂಗಡಿಸಿದೆವು. ಮೂಸಾರೊಡನೆ ಅವರ ಜನರು ನೀರಿಗಾಗಿ ಅಂಗಲಾಚಿದಾಗ, “ನಿಮ್ಮ ಕೋಲಿನಿಂದ ಆ ಬಂಡೆಗೆ ಬಡಿಯಿರಿ” ಎಂದು ನಾವು ಅವರಿಗೆ ದೇವವಾಣಿ ನೀಡಿದೆವು. ಆಗ ಅದರಿಂದ ಹನ್ನೆರಡು ಒರತೆಗಳು ಚಿಮ್ಮಿ ಹರಿದವು. ಜನರೆಲ್ಲರೂ ತಮ್ಮ ತಮ್ಮ ನೀರು ಕುಡಿಯುವ ಸ್ಥಳವನ್ನು ತಿಳಿದುಕೊಂಡರು. ನಾವು ಅವರಿಗೆ ಮೋಡದ ನೆರಳನ್ನು ನೀಡಿದೆವು. ಅವರಿಗೆ ಮನ್ನ ಹಾಗೂ ಸಲ್ವಾವನ್ನು ಇಳಿಸಿಕೊಟ್ಟೆವು. “ನಾವು ನಿಮಗೆ ಒದಗಿಸಿದ ಶುದ್ಧ ವಸ್ತುಗಳಿಂದ ತಿನ್ನಿರಿ” (ಎಂದು ನಾವು ಹೇಳಿದೆವು). ಅವರು ನಮ್ಮೊಂದಿಗೆ ಅನ್ಯಾಯ ಮಾಡಿಲ್ಲ; ಆದರೆ ಅವರು ಅವರೊಂದಿಗೇ ಅನ್ಯಾಯ ಮಾಡುತ್ತಿದ್ದರು.

وَقَطَّعْنَـٰهُمُ ٱثْنَتَىْ عَشْرَةَ أَسْبَاطًا أُمَمًا ۚ وَأَوْحَيْنَآ
إِلَىٰ مُوسَىٰٓ إِذِ ٱسْتَسْقَىٰهُ قَوْمُهُۥٓ أَنِ ٱضْرِب
بِّعَصَاكَ ٱلْحَجَرَ ۖ فَٱنۢبَجَسَتْ مِنْهُ ٱثْنَتَا عَشْرَةَ
عَيْنًا ۖ قَدْ عَلِمَ كُلُّ أُنَاسٍ مَّشْرَبَهُمْ ۚ وَظَلَّلْنَا
عَلَيْهِمُ ٱلْغَمَـٰمَ وَأَنزَلْنَا عَلَيْهِمُ ٱلْمَنَّ وَٱلسَّلْوَىٰ ۖ
كُلُوا۟ مِن طَيِّبَـٰتِ مَا رَزَقْنَـٰكُمْ ۚ وَمَا ظَلَمُونَا
وَلَـٰكِن كَانُوٓا۟ أَنفُسَهُمْ يَظْلِمُونَ ﴿١٦٠﴾

---

161. ಅವರೊಡನೆ ಹೇಳಲಾದ ಸಂದರ್ಭ: “ನೀವು ಈ ಊರಿನಲ್ಲಿ ವಾಸಿಸಿರಿ. ಇಲ್ಲಿ ನೀವು ಇಚ್ಛಿಸುವ ಎಲ್ಲಾ ಕಡೆಯಿಂದ ಯಥೇಷ್ಟವಾಗಿ ತಿನ್ನಿರಿ. ಸಾಷ್ಟಾಂಗ ಮಾಡುತ್ತಾ ದ್ವಾರವನ್ನು ಪ್ರವೇಶಿಸಿರಿ ಮತ್ತು ‘ಹಿತ್ತ’ ಎಂದು ಹೇಳಿರಿ. ನಾವು ನಿಮ್ಮ ಪಾಪಗಳನ್ನು ಕ್ಷಮಿಸುವೆವು ಮತ್ತು ಸತ್ಕರ್ಮವೆಸಗುವವರಿಗೆ

وَإِذْ قِيلَ لَهُمُ ٱسْكُنُوا۟ هَـٰذِهِ ٱلْقَرْيَةَ وَكُلُوا۟ مِنْهَا
حَيْثُ شِئْتُمْ وَقُولُوا۟ حِطَّةٌ وَٱدْخُلُوا۟ ٱلْبَابَ
سُجَّدًا نَّغْفِرْ لَكُمْ خَطِيٓـَٔـٰتِكُمْ ۚ سَنَزِيدُ
ٱلْمُحْسِنِينَ ﴿١٦١﴾

(ಪ್ರತಿಫಲವನ್ನು) ಹೆಚ್ಚಿಸುವೆವು."

162. ಆದರೆ ಆ ಅಕ್ರಮಿಗಳು ಅವರಿಗೆ ಹೇಳಲಾದ ಮಾತಿಗೆ ಬದಲು ಬೇರೊಂದು ಮಾತನ್ನು ಹೇಳಿದರು. ಅವರು ಅಕ್ರಮವೆಸಗು-ತ್ತಿದ್ದ ಕಾರಣ ನಾವು ಅವರ ಮೇಲೆ ಆಕಾಶದಿಂದ ಶಿಕ್ಷೆಯನ್ನು ಇಳಿಸಿದೆವು.

فَبَدَّلَ ٱلَّذِينَ ظَلَمُواْ مِنۡهُمۡ قَوۡلًا غَيۡرَ ٱلَّذِي قِيلَ لَهُمۡ فَأَرۡسَلۡنَا عَلَيۡهِمۡ رِجۡزٗا مِّنَ ٱلسَّمَآءِ بِمَا كَانُواْ يَظۡلِمُونَ ١٦٢

163. ಸಮುದ್ರ ತೀರದಲ್ಲಿದ್ದ ಆ ಊರಿನ ಬಗ್ಗೆ ಅವರೊಡನೆ ಕೇಳಿರಿ. ಅವರು ಸಬ್ಬತ್ ದಿನ (ಶನಿವಾರ) ಅತಿರೇಕವೆಸಗಿದ ಸಂದರ್ಭ. ಸಬ್ಬತ್‌ನ ದಿನ (ಶನಿವಾರ) ಮೀನುಗಳು ನೀರಿನ ಮೇಲೆ ತಲೆಯೆತ್ತುತ್ತಾ ಅವರ ಮುಂದೆ ಪ್ರತ್ಯಕ್ಷವಾಗುತ್ತಿದ್ದವು ಮತ್ತು ಸಬ್ಬತ್ ಅಲ್ಲದ ದಿನ ಅವರ ಮುಂದೆ ಪ್ರತ್ಯಕ್ಷವಾಗುತ್ತಿರಲಿಲ್ಲ. ಅವರು ಅವಿಧೇಯತೆ ತೋರುತ್ತಿದ್ದ ಕಾರಣ ನಾವು ಅವರನ್ನು ಈ ರೀತಿಯಲ್ಲಿ ಪರೀಕ್ಷಿಸಿದೆವು.[1]

وَسۡـَٔلۡهُمۡ عَنِ ٱلۡقَرۡيَةِ ٱلَّتِي كَانَتۡ حَاضِرَةَ ٱلۡبَحۡرِ إِذۡ يَعۡدُونَ فِي ٱلسَّبۡتِ إِذۡ تَأۡتِيهِمۡ حِيتَانُهُمۡ يَوۡمَ سَبۡتِهِمۡ شُرَّعٗا وَيَوۡمَ لَا يَسۡبِتُونَ لَا تَأۡتِيهِمۡۚ كَذَٰلِكَ نَبۡلُوهُم بِمَا كَانُواْ يَفۡسُقُونَ ١٦٣

164. ಅವರಲ್ಲಿ ಒಂದು ಗುಂಪು ಜನರು ಹೇಳಿದರು: "ನೀವೇಕೆ ಈ ಜನರಿಗೆ ಉಪದೇಶ ಮಾಡುತ್ತೀರಿ. ಅಲ್ಲಾಹು ಅವರನ್ನು ನಾಶ ಮಾಡುವನು ಅಥವಾ ಕಠಿಣವಾಗಿ ಶಿಕ್ಷಿಸುವನು." ಅವರು ಹೇಳಿದರು: "ನಿಮ್ಮ ಪರಿಪಾಲಕನ (ಅಲ್ಲಾಹನ) ಮುಂದೆ ನಮ್ಮನ್ನು ದೋಷಮುಕ್ತಗೊಳಿಸುವುದಕ್ಕಾಗಿ ಮತ್ತು ಅವರು ದೇವಭಯವುಳ್ಳವರಾಗುವುದಕ್ಕಾಗಿ (ನಾವು ಹೀಗೆ ಮಾಡುತ್ತಿದ್ದೇವೆ)."[2]

وَإِذۡ قَالَتۡ أُمَّةٞ مِّنۡهُمۡ لِمَ تَعِظُونَ قَوۡمًا ٱللَّهُ مُهۡلِكُهُمۡ أَوۡ مُعَذِّبُهُمۡ عَذَابٗا شَدِيدٗاۖ قَالُواْ مَعۡذِرَةً إِلَىٰ رَبِّكُمۡ وَلَعَلَّهُمۡ يَتَّقُونَ ١٦٤

165. ಅವರಿಗೆ ನೆನಪಿಸಿಕೊಡಲಾದ ವಿಷಯಗಳನ್ನು ಅವರು ಮರೆತು ಬಿಟ್ಟಾಗ, ಕೆಡುಕುಗಳನ್ನು ವಿರೋಧಿಸುತ್ತಿದ್ದ ಜನರನ್ನು ನಾವು ರಕ್ಷಿಸಿದೆವು. ಅಕ್ರಮವೆಸಗಿದ ಜನರನ್ನು ಅವರು ಅವಿಧೇಯತೆ ತೋರುತ್ತಿದ್ದ ಕಾರಣ ನಾವು ಕಠಿಣ ಶಿಕ್ಷೆಯ ಮೂಲಕ ಹಿಡಿದೆವು.

فَلَمَّا نَسُواْ مَا ذُكِّرُواْ بِهِۦٓ أَنجَيۡنَا ٱلَّذِينَ يَنۡهَوۡنَ عَنِ ٱلسُّوٓءِ وَأَخَذۡنَا ٱلَّذِينَ ظَلَمُواْ بِعَذَابِۭ بَـِٔيسِۭ بِمَا كَانُواْ يَفۡسُقُونَ ١٦٥

166. ಅವರಿಗೆ ವಿರೋಧಿಸಲಾದ ವಿಷಯಗಳಲ್ಲಿ ಅವರು ಉದ್ಧಟತನ ತೋರಿದಾಗ ನಾವು ಅವರೊಡನೆ ಹೇಳಿದೆವು: "ನೀವು ನೀಚ ಕಪಿಗಳಾಗಿ ಬಿಡಿ."

فَلَمَّا عَتَوۡاْ عَن مَّا نُهُواْ عَنۡهُ قُلۡنَا لَهُمۡ كُونُواْ قِرَدَةً خَٰسِـِٔينَ ١٦٦

---

[1] ಯಹೂದಿಗಳಿಗೆ ಸಬ್ಬತ್ ದಿನ (ಶನಿವಾರ) ಮೀನು ಹಿಡಿಯುವುದು ನಿಷೇಧಿಸಲಾಗಿತ್ತು. ಆದರೆ ಅಲ್ಲಾಹನ ಪರೀಕ್ಷೆಯಂತೆ ಶನಿವಾರವೇ ನೀರಿನಲ್ಲಿ ಹೆಚ್ಚು ಮೀನುಗಳು ಕಂಡುಬರುತ್ತಿದ್ದವು. ಆದ್ದರಿಂದ ಯಹೂದಿಗಳು ಒಂದು ಉಪಾಯ ಮಾಡಿದರು. ಅವರು ಶನಿವಾರ ಮೀನು ಹಿಡಿಯುವ ಬದಲು ಮೀನಿಗಾಗಿ ಬಲೆ ಹಾಕುತ್ತಿದ್ದರು. ನಂತರ ಅದರಲ್ಲಿ ಸಿಕ್ಕಿದ ಮೀನುಗಳನ್ನು ಭಾನುವಾರ ಹಿಡಿಯುತ್ತಿದ್ದರು. ಇದು ದೇವಾಜ್ಞೆಯ ಸ್ಪಷ್ಟ ಉಲ್ಲಂಘನೆಯಾಗಿತ್ತು.

[2] ಯಹೂದಿಗಳಲ್ಲಿದ್ದ ನೀತಿವಂತರಲ್ಲಿ ಕೆಲವರು ದುಷ್ಟರಿಗೆ ಬುದ್ಧಿವಾದ ಹೇಳಿದಾಗ, ಇತರರು ಹೇಳಿದರು: "ಅವರಿಗೆ ಬುದ್ಧಿವಾದ ಹೇಳಲು ಹೋಗಬೇಡಿ. ಅವರು ಹೇಗೂ ಅಲ್ಲಾಹನ ಶಿಕ್ಷೆಗೆ ಪಾತ್ರರಾಗುವವರು. ಅವರಿಗೆ ಉಪದೇಶ ಮಾಡುವುದು ವ್ಯರ್ಥ." ಆದರೆ ಇದು ಸರಿಯಾದ ನಿಲುವಲ್ಲ. ಒಳಿತನ್ನು ಆದೇಶಿಸುವುದು ಮತ್ತು ಕೆಡುಕನ್ನು ವಿರೋಧಿಸುವುದು ಸತ್ಯವಿಶ್ವಾಸಿಯ ಗುಣವಾಗಿದೆ.

167. “ಪುನರುತ್ಥಾನ ದಿನದ ತನಕ ಅವರಿಗೆ (ಇಸ್ರಾಯೇಲ್ ಮಕ್ಕಳಿಗೆ) ಕಠೋರ ಹಿಂಸೆ ನೀಡುವ ಜನರನ್ನು ಅವರ ವಿರುದ್ಧ ಕಳುಹಿಸುವೆನು” ಎಂದು ನಿಮ್ಮ ಪರಿಪಾಲಕನು (ಅಲ್ಲಾಹು) ಘೋಷಿಸಿದ ಸಂದರ್ಭ. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಅತಿವೇಗವಾಗಿ ಶಿಕ್ಷೆ ನೀಡುತ್ತಾನೆ. ನಿಶ್ಚಯವಾಗಿಯೂ ಅವನು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

وَإِذۡ تَأَذَّنَ رَبُّكَ لَيَبۡعَثَنَّ عَلَيۡهِمۡ إِلَىٰ يَوۡمِ
ٱلۡقِيَٰمَةِ مَن يَسُومُهُمۡ سُوٓءَ ٱلۡعَذَابِۗ إِنَّ رَبَّكَ
لَسَرِيعُ ٱلۡعِقَابِ وَإِنَّهُۥ لَغَفُورٞ رَّحِيمٞ ١٦٧

168. ನಾವು ಅವರನ್ನು ಭೂಮಿಯಲ್ಲಿ ಹಲವು ಗುಂಪುಗಳನ್ನಾಗಿ ವಿಂಗಡಿಸಿದೆವು. ಅವರಲ್ಲಿ ನೀತಿವಂತರಿದ್ದಾರೆ. ಅಲ್ಲದವರೂ ಇದ್ದಾರೆ. ನಾವು ಅವರನ್ನು ಒಳಿತು ಮತ್ತು ಕೆಡುಕುಗಳಿಂದ ಪರೀಕ್ಷಿಸಿದೆವು. ಅವರು (ವಿಧೇಯತೆಗೆ) ಮರಳುವುದಕ್ಕಾಗಿ.

وَقَطَّعۡنَٰهُمۡ فِي ٱلۡأَرۡضِ أُمَمٗاۖ مِّنۡهُمُ ٱلصَّٰلِحُونَ
وَمِنۡهُمۡ دُونَ ذَٰلِكَۖ وَبَلَوۡنَٰهُم بِٱلۡحَسَنَٰتِ
وَٱلسَّيِّـَٔاتِ لَعَلَّهُمۡ يَرۡجِعُونَ ١٦٨

169. ನಂತರ ಅವರ ಹಿಂದೆಯೇ ಅವರ ನಂತರದವರು ಬಂದರು. ಅವರು ಗ್ರಂಥದ ಉತ್ತರಾಧಿಕಾರವನ್ನು ವಹಿಸಿಕೊಂಡರು. ಅವರು ಇಹಲೋಕ ಜೀವನದ ಕೀಳು ವಸ್ತುಗಳನ್ನು ಪಡೆಯುತ್ತಾರೆ. ಅವರು ಹೇಳುತ್ತಾರೆ: “ನಮ್ಮನ್ನು ಕ್ಷಮಿಸಲಾಗುತ್ತದೆ.”[1] ಅದರಂತಹ ಬೇರೆ ವಸ್ತುಗಳು ದೊರಕಿದರೂ ಅವರು ಅದನ್ನು ಪಡೆಯುತ್ತಾರೆ. ಅಲ್ಲಾಹನ ಮೇಲೆ ಸತ್ಯವಲ್ಲದೆ ಬೇರೇನೂ ಹೇಳುವುದಿಲ್ಲ ಮತ್ತು ಗ್ರಂಥವನ್ನು ಅಧ್ಯಯನ ಮಾಡಿ (ಅದರಂತೆ ನಡೆಯುತ್ತೇವೆ) ಎಂದು ಅವರಿಂದ ಗ್ರಂಥದ ಮೂಲಕ ಕರಾರು ಪಡೆಯಲಾಗಿಲ್ಲವೇ? ದೇವಭಯವುಳ್ಳವರಿಗೆ ಪರಲೋಕ ಜೀವನವೇ ಉತ್ತಮ. ನೀವು ಅರ್ಥಮಾಡಿಕೊಳ್ಳುವುದಿಲ್ಲವೇ?

فَخَلَفَ مِنۢ بَعۡدِهِمۡ خَلۡفٞ وَرِثُواْ ٱلۡكِتَٰبَ
يَأۡخُذُونَ عَرَضَ هَٰذَا ٱلۡأَدۡنَىٰ وَيَقُولُونَ سَيُغۡفَرُ
لَنَا وَإِن يَأۡتِهِمۡ عَرَضٞ مِّثۡلُهُۥ يَأۡخُذُوهُۚ أَلَمۡ يُؤۡخَذۡ
عَلَيۡهِم مِّيثَٰقُ ٱلۡكِتَٰبِ أَن لَّا يَقُولُواْ عَلَى ٱللَّهِ
إِلَّا ٱلۡحَقَّ وَدَرَسُواْ مَا فِيهِۗ وَٱلدَّارُ ٱلۡأٓخِرَةُ خَيۡرٞ
لِّلَّذِينَ يَتَّقُونَۚ أَفَلَا تَعۡقِلُونَ ١٦٩

170. ಗ್ರಂಥವನ್ನು ಬಿಗಿಯಾಗಿ ಹಿಡಿಯುವವರು ಮತ್ತು ನಮಾಝನ್ನು ಸಂಸ್ಥಾಪಿಸುವವರು ಯಾರೋ— ನಿಶ್ಚಯವಾಗಿಯೂ ಸುಧಾರಣೆ ಮಾಡುವವರ ಪ್ರತಿಫಲವನ್ನು ನಾವು ವ್ಯರ್ಥಗೊಳಿಸುವುದಿಲ್ಲ.

وَٱلَّذِينَ يُمَسِّكُونَ بِٱلۡكِتَٰبِ وَأَقَامُواْ ٱلصَّلَوٰةَ
إِنَّا لَا نُضِيعُ أَجۡرَ ٱلۡمُصۡلِحِينَ ١٧٠

171. ನಾವು ಪರ್ವತವನ್ನು ಅವರ ಮೇಲೆ ಕೊಡೆಯಂತೆ ಎತ್ತಿ ಹಿಡಿದ ಸಂದರ್ಭ. ಅದು ಅವರ ಮೇಲೆ ಬೀಳಬಹುದೆಂದು ಅವರಿಗೆ ಖಾತ್ರಿಯಾಯಿತು. (ನಾವು ಹೇಳಿದೆವು): “ನಾವು ನಿಮಗೆ ನೀಡಿದ್ದನ್ನು ಬಿಗಿಯಾಗಿ ಹಿಡಿಯಿರಿ ಮತ್ತು ಅದರಲ್ಲಿರುವುದನ್ನು ನೆನಪಿಟ್ಟುಕೊಳ್ಳಿ, ನೀವು ದೇವಭಯವುಳ್ಳವರಾಗುವುದಕ್ಕಾಗಿ.”

وَإِذۡ نَتَقۡنَا ٱلۡجَبَلَ فَوۡقَهُمۡ كَأَنَّهُۥ ظُلَّةٞ وَظَنُّوٓاْ
أَنَّهُۥ وَاقِعُۢ بِهِمۡ خُذُواْ مَآ ءَاتَيۡنَٰكُم بِقُوَّةٖ
وَٱذۡكُرُواْ مَا فِيهِ لَعَلَّكُمۡ تَتَّقُونَ ١٧١

172. ನಿಮ್ಮ ಪರಿಪಾಲಕನು (ಅಲ್ಲಾಹು) ಆದಮರ ಮಕ್ಕಳಿಂದ—ಅವರ

وَإِذۡ أَخَذَ رَبُّكَ مِنۢ بَنِيٓ ءَادَمَ مِن ظُهُورِهِمۡ

[1] ಯಹೂದಿಗಳು ಸ್ವಯಂ ಅವರನ್ನು ದೇವರ ಮಕ್ಕಳು ಮತ್ತು ಶ್ರೇಷ್ಠ ಜನರೆಂದು ನಂಬುತ್ತಾರೆ. ಆದ್ದರಿಂದ ಅವರು ಏನೇ ತಪ್ಪು ಮಾಡಿದರೂ ಅಲ್ಲಾಹು ಅವರನ್ನು ಕ್ಷಮಿಸುತ್ತಾನೆಂಬ ಭಾವನೆ ಅವರಲ್ಲಿದೆ.

ಬೆನ್ನುಗಳಿಂದ ಅವರ ಸಂತಾನವನ್ನು ಹೊರತೆಗೆದು, ಅವರ ವಿಷಯದಲ್ಲಿ ಅವರನ್ನೇ ಸಾಕ್ಷಿ ನಿಲ್ಲಿಸಿದ ಸಂದರ್ಭ. (ಅಲ್ಲಾಹು ಕೇಳಿದನು): "ನಾನು ನಿಮ್ಮ ಪರಿಪಾಲಕನಲ್ಲವೇ?" ಅವರು ಉತ್ತರಿಸಿದರು: "ಹೌದು, ನಾವು ಸಾಕ್ಷಿಗಳಾಗಿದ್ದೇವೆ." ನಿಶ್ಚಯವಾಗಿಯೂ ನಮಗೆ ಇದರ ಬಗ್ಗೆ ಮಾಹಿತಿಯೇ ಇರಲಿಲ್ಲ ಎಂದು ಪುನರುತ್ಥಾನ ದಿನ ನೀವು ಹೇಳಬಾರದೆಂದು (ಹೀಗೆ ಮಾಡಲಾಗಿದೆ).

ذُرِّيَّتَهُمْ وَأَشْهَدَهُمْ عَلَىٰٓ أَنفُسِهِمْ أَلَسْتُ بِرَبِّكُمْ ۖ قَالُوا۟ بَلَىٰ ۛ شَهِدْنَآ ۛ أَن تَقُولُوا۟ يَوْمَ ٱلْقِيَـٰمَةِ إِنَّا كُنَّا عَنْ هَـٰذَا غَـٰفِلِينَ ﴿١٧٢﴾

173. ಅಥವಾ, "ಈ ಹಿಂದೆ ನಮ್ಮ ಪೂರ್ವಜರು ಅಲ್ಲಾಹನೊಂದಿಗೆ ಸಹಭಾಗಿತ್ವ (ಶಿರ್ಕ್) ಮಾಡಿದ್ದರು. ನಾವು ಅವರ ನಂತರದ ಸಂತಾನವಾಗಿದ್ದೇವೆ. ಆ ಮಿಥ್ಯವಾದಿಗಳು ಮಾಡಿದ ತಪ್ಪಿಗಾಗಿ ನೀನು ನಮ್ಮನ್ನು ನಾಶ ಮಾಡುವೆಯಾ?" ಎಂದು ನೀವು ಹೇಳಬಾರದೆಂದು (ಹೀಗೆ ಮಾಡಲಾಗಿದೆ).

أَوْ تَقُولُوٓا۟ إِنَّمَآ أَشْرَكَ ءَابَآؤُنَا مِن قَبْلُ وَكُنَّا ذُرِّيَّةً مِّنۢ بَعْدِهِمْ ۖ أَفَتُهْلِكُنَا بِمَا فَعَلَ ٱلْمُبْطِلُونَ ﴿١٧٣﴾

174. ಈ ರೀತಿ ನಾವು ವಚನಗಳನ್ನು ವಿವರಿಸಿಕೊಡುತ್ತೇವೆ. ಅವರು (ಸತ್ಯಕ್ಕೆ) ಮರಳುವುದಕ್ಕಾಗಿ.

وَكَذَٰلِكَ نُفَصِّلُ ٱلْـَٔايَـٰتِ وَلَعَلَّهُمْ يَرْجِعُونَ ﴿١٧٤﴾

175. ಅವರಿಗೆ ಒಬ್ಬ ವ್ಯಕ್ತಿಯ ಸಮಾಚಾರವನ್ನು ತಿಳಿಸಿಕೊಡಿ. ನಾವು ಅವನಿಗೆ ನಮ್ಮ ವಚನಗಳ ಜ್ಞಾನವನ್ನು ನೀಡಿದೆವು. ಆದರೆ ಅವನು ಅದರಿಂದ ನುಣುಚಿಕೊಂಡನು. ಆಗ ಶೈತಾನನು ಅವನನ್ನು ಹಿಂಬಾಲಿಸಿದನು ಮತ್ತು ಅವನು ದುರ್ಮಾರ್ಗಿಗಳಲ್ಲಿ ಸೇರಿಬಿಟ್ಟನು.

وَٱتْلُ عَلَيْهِمْ نَبَأَ ٱلَّذِىٓ ءَاتَيْنَـٰهُ ءَايَـٰتِنَا فَٱنسَلَخَ مِنْهَا فَأَتْبَعَهُ ٱلشَّيْطَـٰنُ فَكَانَ مِنَ ٱلْغَاوِينَ ﴿١٧٥﴾

176. ನಾವು ಇಚ್ಛಿಸುತ್ತಿದ್ದರೆ ಆ ಜ್ಞಾನದ ಮೂಲಕ ನಾವು ಅವನನ್ನು ಉನ್ನತಿಗೇರಿಸುತ್ತಿದ್ದೆವು. ಆದರೆ ಅವನು ಭೂಮಿಗೆ ಅಂಟಿಕೊಂಡು ಸ್ವೇಚ್ಛೆಗಳನ್ನು ಹಿಂಬಾಲಿಸಿದನು. ಅವನ ಉದಾಹರಣೆಯು ಒಂದು ನಾಯಿಯಂತೆ. ನೀವು ಅದನ್ನು ಓಡಿಸಿದರೂ ಅದು ನಾಲಗೆ ಹೊರಚಾಚುತ್ತದೆ. ನೀವು ಅದನ್ನು ಅದರ ಪಾಡಿಗೆ ಬಿಟ್ಟರೂ ಅದು ನಾಲಗೆ ಹೊರಚಾಚುತ್ತದೆ. ಇದು ನಮ್ಮ ವಚನಗಳನ್ನು ನಿಷೇಧಿಸಿದವರ ಉದಾಹರಣೆಯಾಗಿದೆ. ಅವರಿಗೆ ಈ ಕಥೆಗಳನ್ನು ಹೇಳಿಕೊಡಿ. ಅವರು ಆಲೋಚಿಸುವುದಕ್ಕಾಗಿ.

وَلَوْ شِئْنَا لَرَفَعْنَـٰهُ بِهَا وَلَـٰكِنَّهُۥٓ أَخْلَدَ إِلَى ٱلْأَرْضِ وَٱتَّبَعَ هَوَىٰهُ ۚ فَمَثَلُهُۥ كَمَثَلِ ٱلْكَلْبِ إِن تَحْمِلْ عَلَيْهِ يَلْهَثْ أَوْ تَتْرُكْهُ يَلْهَث ۚ ذَّٰلِكَ مَثَلُ ٱلْقَوْمِ ٱلَّذِينَ كَذَّبُوا۟ بِـَٔايَـٰتِنَا ۚ فَٱقْصُصِ ٱلْقَصَصَ لَعَلَّهُمْ يَتَفَكَّرُونَ ﴿١٧٦﴾

177. ನಮ್ಮ ವಚನಗಳನ್ನು ನಿಷೇಧಿಸಿದ ಮತ್ತು ಸ್ವಯಂ ಅಕ್ರಮವೆಸಗಿದ ಜನರ ಉದಾಹರಣೆಯು ಬಹಳ ನಿಕೃಷ್ಟವಾಗಿದೆ.

سَآءَ مَثَلًا ٱلْقَوْمُ ٱلَّذِينَ كَذَّبُوا۟ بِـَٔايَـٰتِنَا وَأَنفُسَهُمْ كَانُوا۟ يَظْلِمُونَ ﴿١٧٧﴾

178. ಅಲ್ಲಾಹು ಯಾರಿಗೆ ಸನ್ಮಾರ್ಗ ತೋರಿಸುತ್ತಾನೋ ಅವನು ಸನ್ಮಾರ್ಗವನ್ನು ಪಡೆಯುತ್ತಾನೆ. ಅವನು ಯಾರನ್ನು

مَن يَهْدِ ٱللَّهُ فَهُوَ ٱلْمُهْتَدِى ۖ وَمَن يُضْلِلْ فَأُو۟لَـٰٓئِكَ هُمُ ٱلْخَـٰسِرُونَ ﴿١٧٨﴾

ದಾರಿತಪ್ಪಿಸುತ್ತಾನೋ ಅವರೇ ನಷ್ಟಹೊಂದಿದವರು.

وَلَقَدۡ ذَرَأۡنَا لِجَهَنَّمَ كَثِيرٗا مِّنَ ٱلۡجِنِّ وَٱلۡإِنسِۖ لَهُمۡ قُلُوبٞ لَّا يَفۡقَهُونَ بِهَا وَلَهُمۡ أَعۡيُنٞ لَّا يُبۡصِرُونَ بِهَا وَلَهُمۡ ءَاذَانٞ لَّا يَسۡمَعُونَ بِهَآۚ أُوْلَٰٓئِكَ كَٱلۡأَنۡعَٰمِ بَلۡ هُمۡ أَضَلُّۚ أُوْلَٰٓئِكَ هُمُ ٱلۡغَٰفِلُونَ ﴿١٧٩﴾

179. ಜಿನ್ನ್ ಮತ್ತು ಮನುಷ್ಯರಲ್ಲಿ ಸೇರಿದ ಬಹುಪಾಲನ್ನು ನಾವು ನರಕಕ್ಕಾಗಿ ಸೃಷ್ಟಿಸಿದ್ದೇವೆ. ಅವರಿಗೆ ಹೃದಯಗಳಿವೆ; ಆದರೆ ಅವರು ಅವುಗಳ ಮೂಲಕ ಅರ್ಥಮಾಡಿಕೊಳ್ಳುವುದಿಲ್ಲ. ಅವರಿಗೆ ಕಣ್ಣುಗಳಿವೆ; ಆದರೆ ಅವರು ಅವುಗಳ ಮೂಲಕ ನೋಡುವುದಿಲ್ಲ. ಅವರಿಗೆ ಕಿವಿಗಳಿವೆ; ಆದರೆ ಅವರು ಅವುಗಳ ಮೂಲಕ ಕೇಳುವುದಿಲ್ಲ. ಅವರು ಜಾನುವಾರುಗಳಂತೆ. ಅಲ್ಲ, ಅವರು ಅತ್ಯಧಿಕ ದಾರಿತಪ್ಪಿದವರು. ಅವರೇ ನಿರ್ಲಕ್ಷ್ಯದಲ್ಲಿರುವವರು.

وَلِلَّهِ ٱلۡأَسۡمَآءُ ٱلۡحُسۡنَىٰ فَٱدۡعُوهُ بِهَاۖ وَذَرُواْ ٱلَّذِينَ يُلۡحِدُونَ فِيٓ أَسۡمَٰٓئِهِۦۚ سَيُجۡزَوۡنَ مَا كَانُواْ يَعۡمَلُونَ ﴿١٨٠﴾

180. ಅಲ್ಲಾಹನಿಗೆ ಅತಿಸುಂದರವಾದ ಹೆಸರುಗಳಿವೆ. ಆದ್ದರಿಂದ ಅವುಗಳ ಮೂಲಕ ಅವನನ್ನು ಕರೆದು ಪ್ರಾರ್ಥಿಸಿರಿ. ಅವನ ಹೆಸರುಗಳ ವಿಷಯದಲ್ಲಿ ವಾಮಮಾರ್ಗವನ್ನು ತುಳಿಯುವವರನ್ನು ಬಿಟ್ಟುಬಿಡಿ. ಅವರು ಮಾಡಿದ ಕೃತ್ಯಗಳ ಪ್ರತಿಫಲವನ್ನು ಅವರಿಗೆ ಸದ್ಯವೇ ನೀಡಲಾಗುವುದು.

وَمِمَّنۡ خَلَقۡنَآ أُمَّةٞ يَهۡدُونَ بِٱلۡحَقِّ وَبِهِۦ يَعۡدِلُونَ ﴿١٨١﴾

181. ನಾವು ಸೃಷ್ಟಿಸಿದ ಸೃಷ್ಟಿಗಳಲ್ಲಿ ಸತ್ಯದ ಆಧಾರದಲ್ಲಿ ಮಾರ್ಗದರ್ಶನ ಮಾಡುವ ಮತ್ತು ಅದರ ಆಧಾರದಲ್ಲಿ ನ್ಯಾಯ ಸ್ಥಾಪಿಸುವ ಒಂದು ಸಮುದಾಯವಿದೆ.

وَٱلَّذِينَ كَذَّبُواْ بِـَٔايَٰتِنَا سَنَسۡتَدۡرِجُهُم مِّنۡ حَيۡثُ لَا يَعۡلَمُونَ ﴿١٨٢﴾

182. ನಮ್ಮ ವಚನಗಳನ್ನು ನಿಷೇಧಿಸಿದವರು ಯಾರೋ—ಅವರು ತಿಳಿಯದ ರೀತಿಯಲ್ಲಿ ನಾವು ಅವರನ್ನು ಹಂತ ಹಂತವಾಗಿ ಆವರಿಸಿಕೊಳ್ಳುವೆವು.

وَأُمۡلِي لَهُمۡۚ إِنَّ كَيۡدِي مَتِينٌ ﴿١٨٣﴾

183. ನಾನು ಅವರಿಗೆ ಕಾಲಾವಕಾಶ ನೀಡುವೆನು. ನಿಶ್ಚಯವಾಗಿಯೂ ನನ್ನ ತಂತ್ರಗಾರಿಕೆಯು ಬಲಿಷ್ಠವಾಗಿದೆ.

أَوَلَمۡ يَتَفَكَّرُواْۗ مَا بِصَاحِبِهِم مِّن جِنَّةٍۚ إِنۡ هُوَ إِلَّا نَذِيرٞ مُّبِينٌ ﴿١٨٤﴾

184. ಅವರು ಆಲೋಚಿಸುವುದಿಲ್ಲವೇ? ಅವರ ಸಂಗಡಿಗನಿಗೆ (ಮುಹಮ್ಮದರಿಗೆ) ಯಾವುದೇ ರೀತಿಯ ಬುದ್ಧಿಭ್ರಮಣೆಯಿಲ್ಲ. ಅವರೊಬ್ಬ ಸ್ಪಷ್ಟ ಮುನ್ನೆಚ್ಚರಿಕೆಗಾರ ಮಾತ್ರವಾಗಿದ್ದಾರೆ.

أَوَلَمۡ يَنظُرُواْ فِي مَلَكُوتِ ٱلسَّمَٰوَٰتِ وَٱلۡأَرۡضِ وَمَا خَلَقَ ٱللَّهُ مِن شَيۡءٖ وَأَنۡ عَسَىٰٓ أَن يَكُونَ قَدِ ٱقۡتَرَبَ أَجَلُهُمۡۖ فَبِأَيِّ حَدِيثِۭ بَعۡدَهُۥ يُؤۡمِنُونَ ﴿١٨٥﴾

185. ಭೂಮ್ಯಾಕಾಶಗಳ ಸಾಮ್ರಾಜ್ಯಗಳನ್ನು ಮತ್ತು ಅಲ್ಲಾಹು ಸೃಷ್ಟಿಸಿದ ಎಲ್ಲಾ ವಸ್ತುಗಳನ್ನು ಹಾಗೂ ಅವರ ಜೀವಿತಾವಧಿ ಸಮೀಪಿಸಿರಬಹುದೆಂದು ಅವರು ಆಲೋಚಿಸಿ ನೋಡುವುದಿಲ್ಲವೇ? ಇದರ (ಕುರ್‌ಆನಿನ) ಬಳಿಕ ಅವರು ಯಾವ ಸಮಾಚಾರದಲ್ಲಿ ವಿಶ್ವಾಸವಿಡುವರು?

مَن يُضۡلِلِ ٱللَّهُ فَلَا هَادِيَ لَهُۥۚ وَيَذَرُهُمۡ فِي

186. ಅಲ್ಲಾಹು ಯಾರನ್ನು ದಾರಿತಪ್ಪಿಸುತ್ತಾನೋ ಅವನಿಗೆ ಸನ್ಮಾರ್ಗ ತೋರಿಸಲು ಯಾರಿಗೂ ಸಾಧ್ಯವಿಲ್ಲ. ಅವರು ಅವರ

طُغۡيَٰنِهِمۡ يَعۡمَهُونَ ١٨٦

ಅತಿರೇಕಗಳಲ್ಲಿ ಅಂಧವಾಗಿ ವಿಹರಿಸುವಂತೆ ಅವನು ಅವರನ್ನು ಬಿಟ್ಟುಬಿಡುವನು.

---

يَسۡـَٔلُونَكَ عَنِ ٱلسَّاعَةِ أَيَّانَ مُرۡسَىٰهَاۖ قُلۡ إِنَّمَا عِلۡمُهَا عِندَ رَبِّيۖ لَا يُجَلِّيهَا لِوَقۡتِهَآ إِلَّا هُوَۚ ثَقُلَتۡ فِي ٱلسَّمَٰوَٰتِ وَٱلۡأَرۡضِۚ لَا تَأۡتِيكُمۡ إِلَّا بَغۡتَةٗۗ يَسۡـَٔلُونَكَ كَأَنَّكَ حَفِيٌّ عَنۡهَاۖ قُلۡ إِنَّمَا عِلۡمُهَا عِندَ ٱللَّهِ وَلَٰكِنَّ أَكۡثَرَ ٱلنَّاسِ لَا يَعۡلَمُونَ ١٨٧

**187.** ಅವರು ಅಂತಿಮದಿನದ ಬಗ್ಗೆ—"ಅದು ಯಾವಾಗ ಸಂಭವಿಸುತ್ತದೆ" ಎಂದು ಕೇಳುತ್ತಾರೆ. ಹೇಳಿರಿ: "ಅದರ ಜ್ಞಾನವಿರುವುದು ನನ್ನ ಪರಿಪಾಲಕನಿಗೆ (ಅಲ್ಲಾಹನಿಗೆ) ಮಾತ್ರ. ಅದರ ಸಮಯದಲ್ಲಿ ಅವನಲ್ಲದೆ ಯಾರೂ ಅದನ್ನು ಪ್ರಕಟಗೊಳಿಸುವುದಿಲ್ಲ. ಭೂಮ್ಯಾಕಾಶಗಳಲ್ಲಿ ಅದು ಅತ್ಯಂತ ಭಾರವಿರುವ (ಭಯಾನಕ) ಸಂಗತಿಯಾಗಿದೆ. ಅದು ಅನಿರೀಕ್ಷಿತವಾಗಿಯೇ ನಿಮ್ಮ ಬಳಿಗೆ ಬರುತ್ತದೆ." ನಿಮಗೆ ಅದರ ಬಗ್ಗೆ ಜ್ಞಾನವಿದೆಯೆಂಬ ಭಾವನೆಯಿಂದ ಅವರು ನಿಮ್ಮಲ್ಲಿ ಕೇಳುತ್ತಾರೆ. ಹೇಳಿರಿ: "ಅದರ ಜ್ಞಾನವಿರುವುದು ಅಲ್ಲಾಹನಿಗೆ ಮಾತ್ರ." ಆದರೆ ಜನರಲ್ಲಿ ಹೆಚ್ಚಿನವರು ತಿಳಿಯುವುದಿಲ್ಲ.

---

قُل لَّآ أَمۡلِكُ لِنَفۡسِي نَفۡعٗا وَلَا ضَرًّا إِلَّا مَا شَآءَ ٱللَّهُۚ وَلَوۡ كُنتُ أَعۡلَمُ ٱلۡغَيۡبَ لَٱسۡتَكۡثَرۡتُ مِنَ ٱلۡخَيۡرِ وَمَا مَسَّنِيَ ٱلسُّوٓءُۚ إِنۡ أَنَا۠ إِلَّا نَذِيرٞ وَبَشِيرٞ لِّقَوۡمٖ يُؤۡمِنُونَ ١٨٨

**188.** ಹೇಳಿರಿ: "ನಾನು ನನಗಾಗಿ ಯಾವುದೇ ಲಾಭ ಅಥವಾ ತೊಂದರೆ ಮಾಡುವ ಅಧಿಕಾರವನ್ನು ಹೊಂದಿಲ್ಲ—ಅಲ್ಲಾಹು ಏನು ಇಚ್ಛಿಸುತ್ತಾನೋ ಅದರ ಹೊರತು. ನನಗೆ ಅದೃಶ್ಯ ಜ್ಞಾನವಿರುತ್ತಿದ್ದರೆ, ನಾನು ಹೇರಳ ಒಳಿತುಗಳನ್ನು ಮಾಡುತ್ತಿದ್ದೆ. ಕೆಡುಕು ನನ್ನನ್ನು ಸ್ಪರ್ಶಿಸುತ್ತಲೇ ಇರಲಿಲ್ಲ. ವಿಶ್ವಾಸವಿಡುವ ಜನರಿಗೆ ನಾನೊಬ್ಬ ಮುನ್ನೆಚ್ಚರಿಕೆಗಾರ ಮತ್ತು ಸುವಾರ್ತೆ ನೀಡುವವ ಮಾತ್ರವಾಗಿದ್ದೇನೆ."

---

هُوَ ٱلَّذِي خَلَقَكُم مِّن نَّفۡسٖ وَٰحِدَةٖ وَجَعَلَ مِنۡهَا زَوۡجَهَا لِيَسۡكُنَ إِلَيۡهَاۖ فَلَمَّا تَغَشَّىٰهَا حَمَلَتۡ حَمۡلًا خَفِيفٗا فَمَرَّتۡ بِهِۦۖ فَلَمَّآ أَثۡقَلَت دَّعَوَا ٱللَّهَ رَبَّهُمَا لَئِنۡ ءَاتَيۡتَنَا صَٰلِحٗا لَّنَكُونَنَّ مِنَ ٱلشَّٰكِرِينَ ١٨٩

**189.** ನಿಮ್ಮನ್ನು ಒಂದೇ ದೇಹದಿಂದ ಸೃಷ್ಟಿಸಿದವನು ಅವನೇ. ನಂತರ ಅವನಿಂದ ಅವನ ಪತ್ನಿಯನ್ನು ಸೃಷ್ಟಿಸಿದನು—ಅವನು ಅವಳಿಂದ ನೆಮ್ಮದಿ ಪಡೆಯುವುದಕ್ಕಾಗಿ. ನಂತರ ಅವನು ಅವಳೊಡನೆ ಸೇರಿದಾಗ ಅವಳು ಹಗುರವಾದ ಗರ್ಭ ಧರಿಸಿ, ನಂತರ ಅದರೊಂದಿಗೆ ಮುಂದುವರಿದಳು. ಅವಳ ಭಾರವು ಹೆಚ್ಚಾದಾಗ (ಹೆರಿಗೆ ನೋವು ಗೋಚರಿಸಿದಾಗ) ಅವರಿಬ್ಬರೂ ಅವರ ಪರಿಪಾಲಕನಾದ ಅಲ್ಲಾಹನನ್ನು ಕರೆದು ಪ್ರಾರ್ಥಿಸಿದರು: "ನೀನು ನಮಗೆ ನೀತಿವಂತ ಮಗುವನ್ನು ನೀಡಿದರೆ ನಾವು ಖಂಡಿತ ನಿನಗೆ ಆಭಾರಿಯಾಗುವೆವು."

---

فَلَمَّآ ءَاتَىٰهُمَا صَٰلِحٗا جَعَلَا لَهُۥ شُرَكَآءَ فِيمَآ ءَاتَىٰهُمَاۚ فَتَعَٰلَى ٱللَّهُ عَمَّا يُشۡرِكُونَ ١٩٠

**190.** ಅವನು ಅವರಿಗೆ ನೀತಿವಂತ ಮಗುವನ್ನು ನೀಡಿದಾಗ, ಅವನು ಅವರಿಗೆ ನೀಡಿದ್ದರಲ್ಲಿಯೇ ಅವರು ಅವನಿಗೆ ಸಹಭಾಗಿಗಳನ್ನು ನಿಶ್ಚಯಿಸಿದರು. ಅವರು ಮಾಡುವ ಸಹಭಾಗಿತ್ವದಿಂದ ಅಲ್ಲಾಹು ಎಷ್ಟೋ ಉನ್ನತನಾಗಿದ್ದಾನೆ.

191. ಯಾವುದೇ ವಸ್ತುವನ್ನು ಸೃಷ್ಟಿಸದವರನ್ನೋ ಅವರು ಅಲ್ಲಾಹನಿಗೆ ಸಹಭಾಗಿಯನ್ನಾಗಿ ಮಾಡುವುದು? (ವಾಸ್ತವವಾಗಿ) ಅವರೇ ಸೃಷ್ಟಿಗಳಾಗಿದ್ದಾರೆ.

أَيُشۡرِكُونَ مَا لَا يَخۡلُقُ شَيۡـٔٗا وَهُمۡ يُخۡلَقُونَ ١٩١

192. ಅವರಿಗೆ ಯಾವುದೇ ಸಹಾಯವನ್ನು ಮಾಡಲು ಆ ದೇವರುಗಳಿಗೆ ಸಾಧ್ಯವಿಲ್ಲ. ಸ್ವಯಂ ಅವರಿಗೂ ಅವರು ಸಹಾಯ ಮಾಡುವುದಿಲ್ಲ.

وَلَا يَسۡتَطِيعُونَ لَهُمۡ نَصۡرٗا وَلَآ أَنفُسَهُمۡ
يَنصُرُونَ ١٩٢

193. ನೀವು ಅವರನ್ನು ಸನ್ಮಾರ್ಗಕ್ಕೆ ಕರೆದರೆ ಅವರು ನಿಮ್ಮನ್ನು ಅನುಸರಿಸುವುದಿಲ್ಲ. ನೀವು ಅವರನ್ನು ಕರೆದರೂ ಅಥವಾ ಕರೆಯದೆ ಮೌನವಾಗಿದ್ದರೂ ನಿಮಗೆ ಸಂಬಂಧಿಸಿದಂತೆ ಅವೆರಡೂ ಸಮಾನವಾಗಿವೆ.

وَإِن تَدۡعُوهُمۡ إِلَى ٱلۡهُدَىٰ لَا يَتَّبِعُوكُمۡۚ سَوَآءٌ
عَلَيۡكُمۡ أَدَعَوۡتُمُوهُمۡ أَمۡ أَنتُمۡ صَٰمِتُونَ ١٩٣

194. ನೀವು ಅಲ್ಲಾಹನನ್ನು ಬಿಟ್ಟು ಯಾರನ್ನು ಕರೆದು ಪ್ರಾರ್ಥಿಸುತ್ತೀರೋ ಅವರು (ಆ ದೇವರುಗಳು) ನಿಶ್ಚಯವಾಗಿಯೂ ನಿಮ್ಮಂತಹ ಸೃಷ್ಟಿಗಳಾಗಿದ್ದಾರೆ. ಅವರನ್ನು ಕರೆದು ಪ್ರಾರ್ಥಿಸಿರಿ; ಅವರು ನಿಮಗೆ ಉತ್ತರ ನೀಡುತ್ತಾರೋ ನೋಡೋಣ. ನೀವು ಸತ್ಯವಂತರಾಗಿದ್ದರೆ.

إِنَّ ٱلَّذِينَ تَدۡعُونَ مِن دُونِ ٱللَّهِ عِبَادٌ
أَمۡثَالُكُمۡۖ فَٱدۡعُوهُمۡ فَلۡيَسۡتَجِيبُواْ لَكُمۡ إِن
كُنتُمۡ صَٰدِقِينَ ١٩٤

195. ಅವರಿಗೆ ನಡೆಯಲು ಸಾಧ್ಯವಾಗುವ ಕಾಲುಗಳಿವೆಯೇ? ಅವರಿಗೆ ಹಿಡಿಯಲು ಸಾಧ್ಯವಾಗುವ ಕೈಗಳಿವೆಯೇ? ಅವರಿಗೆ ನೋಡಲು ಸಾಧ್ಯವಾಗುವ ಕಣ್ಣುಗಳಿವೆಯೇ? ಅವರಿಗೆ ಕೇಳಲು ಸಾಧ್ಯವಾಗುವ ಕಿವಿಗಳಿವೆಯೇ? ಹೇಳಿರಿ: "ನೀವು ನಿಮ್ಮ ಸಹಭಾಗಿಗಳನ್ನು (ದೇವರುಗಳನ್ನು) ಕರೆಯಿರಿ. ನಂತರ ನನ್ನ ಮೇಲೆ ನಿಮ್ಮ ತಂತ್ರವನ್ನು ಪ್ರಯೋಗಿಸಿರಿ. ನನಗೆ ಕಾಲಾವಕಾಶ ನೀಡಬೇಡಿ."

أَلَهُمۡ أَرۡجُلٞ يَمۡشُونَ بِهَآۖ أَمۡ لَهُمۡ أَيۡدٖ يَبۡطِشُونَ
بِهَآۖ أَمۡ لَهُمۡ أَعۡيُنٞ يُبۡصِرُونَ بِهَآۖ أَمۡ لَهُمۡ ءَاذَانٞ
يَسۡمَعُونَ بِهَاۗ قُلِ ٱدۡعُواْ شُرَكَآءَكُمۡ ثُمَّ
كِيدُونِ فَلَا تُنظِرُونِ ١٩٥

196. ನಿಶ್ಚಯವಾಗಿಯೂ ಈ ಗ್ರಂಥವನ್ನು ಅವತೀರ್ಣಗೊಳಿಸಿದ ಅಲ್ಲಾಹನೇ ನನ್ನ ರಕ್ಷಕ. ಅವನು ನೀತಿವಂತರನ್ನು ಸಂರಕ್ಷಿಸುವ ಹೊಣೆಯನ್ನು ವಹಿಸಿಕೊಂಡಿದ್ದಾನೆ.

إِنَّ وَلِـِّۧيَ ٱللَّهُ ٱلَّذِي نَزَّلَ ٱلۡكِتَٰبَۖ وَهُوَ يَتَوَلَّى
ٱلصَّٰلِحِينَ ١٩٦

197. ನೀವು ಅವನನ್ನು (ಅಲ್ಲಾಹನನ್ನು) ಬಿಟ್ಟು ಯಾರನ್ನು ಕರೆದು ಪ್ರಾರ್ಥಿಸುತ್ತೀರೋ—ನಿಮಗೆ ಸಹಾಯ ಮಾಡಲು ಅವರಿಗೆ ಸಾಧ್ಯವಿಲ್ಲ. ಸ್ವಯಂ ಅವರಿಗೂ ಅವರು ಸಹಾಯ ಮಾಡುವುದಿಲ್ಲ.

وَٱلَّذِينَ تَدۡعُونَ مِن دُونِهِۦ لَا يَسۡتَطِيعُونَ
نَصۡرَكُمۡ وَلَآ أَنفُسَهُمۡ يَنصُرُونَ ١٩٧

198. ನೀವು ಅವರನ್ನು ಸನ್ಮಾರ್ಗಕ್ಕೆ ಕರೆದರೆ ಅವರು ಅದನ್ನು ಕೇಳುವುದಿಲ್ಲ. ಅವರು ನಿಮ್ಮನ್ನು ನೋಡುತ್ತಿರುವಂತೆ ನಿಮಗೆ ಕಾಣಬಹುದು. ಆದರೆ ಅವರು ನೋಡುವುದಿಲ್ಲ.

وَإِن تَدۡعُوهُمۡ إِلَى ٱلۡهُدَىٰ لَا يَسۡمَعُواْۖ وَتَرَىٰهُمۡ
يَنظُرُونَ إِلَيۡكَ وَهُمۡ لَا يُبۡصِرُونَ ١٩٨

199. (ಜನರೊಡನೆ) ಸೌಮ್ಯವಾಗಿ ವರ್ತಿಸಿರಿ, ಒಳಿತನ್ನು ಆದೇಶಿಸಿರಿ ಮತ್ತು ಅವಿವೇಕಿಗಳಿಂದ ದೂರವಿರಿ.

خُذِ ٱلۡعَفۡوَ وَأۡمُرۡ بِٱلۡعُرۡفِ وَأَعۡرِضۡ عَنِ
ٱلۡجَٰهِلِينَ ١٩٩

200. ನಿಮಗೆ ಶೈತಾನನಿಂದ ಏನಾದರೂ ದುಷ್ಪ್ರೇರಣೆ ಅನುಭವವಾದರೆ ಅಲ್ಲಾಹನಲ್ಲಿ ಅಭಯ ಯಾಚಿಸಿರಿ. ನಿಶ್ಚಯವಾಗಿಯೂ ಅವನು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

وَإِمَّا يَنزَغَنَّكَ مِنَ ٱلشَّيۡطَٰنِ نَزۡغٞ فَٱسۡتَعِذۡ
بِٱللَّهِۚ إِنَّهُۥ سَمِيعٌ عَلِيمٌ ٢٠٠

201. ನಿಶ್ಚಯವಾಗಿಯೂ ದೇವಭಯವುಳ್ಳವರಿಗೆ ಶೈತಾನನಿಂದ ಏನಾದರೂ ದುಷ್ಪ್ರೇರಣೆ ಅನುಭವವಾದರೆ, ಅವರು ಅಲ್ಲಾಹನನ್ನು ಸ್ಮರಿಸುತ್ತಾರೆ. ಆಗ ಅವರು ಒಳದೃಷ್ಟಿಯುಳ್ಳವರಾಗುತ್ತಾರೆ.

إِنَّ ٱلَّذِينَ ٱتَّقَوۡاْ إِذَا مَسَّهُمۡ طَٰٓئِفٞ مِّنَ
ٱلشَّيۡطَٰنِ تَذَكَّرُواْ فَإِذَا هُم مُّبۡصِرُونَ ٢٠١

202. ಅವರು (ಶೈತಾನರು) ಅವರ ಸಹೋದರರನ್ನು ದುರ್ಮಾರ್ಗದಲ್ಲಿ ಬಿಟ್ಟುಬಿಡುತ್ತಾರೆ. ಅವರು ಅದರಲ್ಲಿ ಯಾವುದೇ ಅಭಾವ ಮಾಡುವುದಿಲ್ಲ.

وَإِخۡوَٰنُهُمۡ يَمُدُّونَهُمۡ فِي ٱلۡغَيِّ ثُمَّ لَا
يُقۡصِرُونَ ٢٠٢

203. ನೀವು ಅವರಿಗೆ ಒಂದು ದೃಷ್ಟಾಂತವನ್ನು ತಂದು ತೋರಿಸದಿದ್ದರೆ, ಅವರು ಹೇಳುತ್ತಾರೆ: "ನೀವೇ ಅದನ್ನು ರಚಿಸಿ ತರಬಾರದೇ?" ಹೇಳಿರಿ: "ನನ್ನ ಪರಿಪಾಲಕನಿಂದ (ಅಲ್ಲಾಹನಿಂದ) ಬರುವ ದೇವವಾಣಿಗಳನ್ನು ಮಾತ್ರ ನಾನು ಅನುಸರಿಸುತ್ತೇನೆ. ಇದು (ಕುರ್‌ಆನ್) ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಕಣ್ತೆರೆಸುವ ಸಾಕ್ಷ್ಯಾಧಾರವಾಗಿದೆ ಮತ್ತು ವಿಶ್ವಾಸವಿಡುವ ಜನರಿಗೆ ಸನ್ಮಾರ್ಗ ಮತ್ತು ದಯೆಯಾಗಿದೆ."

وَإِذَا لَمۡ تَأۡتِهِم بِـَٔايَةٖ قَالُواْ لَوۡلَا ٱجۡتَبَيۡتَهَاۚ قُلۡ
إِنَّمَآ أَتَّبِعُ مَا يُوحَىٰٓ إِلَيَّ مِن رَّبِّيۚ هَٰذَا بَصَآئِرُ
مِن رَّبِّكُمۡ وَهُدٗى وَرَحۡمَةٞ لِّقَوۡمٖ يُؤۡمِنُونَ ٢٠٣

204. ಕುರ್‌ಆನ್ ಪಠಿಸಲಾಗುವಾಗ ಅದನ್ನು ಕಿವಿಗೊಟ್ಟು ಕೇಳಿರಿ ಮತ್ತು ಮೌನವಾಗಿರಿ. ನಿಮಗೆ ದಯೆ ತೋರಲಾಗುವುದಕ್ಕಾಗಿ.

وَإِذَا قُرِئَ ٱلۡقُرۡءَانُ فَٱسۡتَمِعُواْ لَهُۥ وَأَنصِتُواْ
لَعَلَّكُمۡ تُرۡحَمُونَ ٢٠٤

205. ವಿನಯ ಮತ್ತು ಭಯದಿಂದ ಧ್ವನಿಯನ್ನು ತಗ್ಗಿಸಿ ಮುಂಜಾನೆ ಮತ್ತು ಸಂಜೆ ನೀವು ನಿಮ್ಮ ಮನಸ್ಸಿನಲ್ಲೇ ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಸ್ಮರಿಸಿರಿ. ನೀವು ನಿರ್ಲಕ್ಷ್ಯರಾಗಿರುವವರಲ್ಲಿ ಸೇರಬೇಡಿ.

وَٱذۡكُر رَّبَّكَ فِي نَفۡسِكَ تَضَرُّعٗا وَخِيفَةٗ وَدُونَ
ٱلۡجَهۡرِ مِنَ ٱلۡقَوۡلِ بِٱلۡغُدُوِّ وَٱلۡأٓصَالِ وَلَا تَكُن
مِّنَ ٱلۡغَٰفِلِينَ ٢٠٥

206. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನ (ಅಲ್ಲಾಹನ) ಬಳಿಯಿರುವವರು (ದೇವದೂತರು) ಅವನನ್ನು ಆರಾಧಿಸುವ ವಿಷಯದಲ್ಲಿ ಅಹಂಕಾರ ತೋರುವುದಿಲ್ಲ. ಅವರು ಅವನ ಪರಿಶುದ್ಧಿಯನ್ನು ಕೊಂಡಾಡುತ್ತಾರೆ ಮತ್ತು ಅವನಿಗೆ ಸಾಷ್ಟಾಂಗ ಮಾಡುತ್ತಾರೆ.

إِنَّ ٱلَّذِينَ عِندَ رَبِّكَ لَا يَسۡتَكۡبِرُونَ عَنۡ
عِبَادَتِهِۦ وَيُسَبِّحُونَهُۥ وَلَهُۥ يَسۡجُدُونَ ۩ ٢٠٦

# 8. ಅಲ್-ಅನ್ಫಾಲ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಅವರು ನಿಮ್ಮಲ್ಲಿ ಯುದ್ಧಾರ್ಜಿತ ಸೊತ್ತುಗಳ ಬಗ್ಗೆ ಕೇಳುತ್ತಾರೆ.[1] ಹೇಳಿರಿ: “ಯುದ್ಧಾರ್ಜಿತ ಸೊತ್ತು ಅಲ್ಲಾಹನಿಗೆ ಮತ್ತು ಸಂದೇಶವಾಹಕರಿಗೆ ಸೇರಿದ್ದು.”[2] ನೀವು ಅಲ್ಲಾಹನನ್ನು ಭಯಪಡಿರಿ ಮತ್ತು ಪರಸ್ಪರ ನಿಮ್ಮ ಸಂಬಂಧಗಳನ್ನು ಸುಧಾರಿಸಿರಿ. ಅಲ್ಲಾಹು ಮತ್ತು ಸಂದೇಶವಾಹಕರ ಆಜ್ಞಾಪಾಲನೆ ಮಾಡಿರಿ. ನೀವು ಸತ್ಯವಿಶ್ವಾಸಿಗಳಾಗಿದ್ದರೆ.

يَسۡـَٔلُونَكَ عَنِ ٱلۡأَنفَالِۖ قُلِ ٱلۡأَنفَالُ لِلَّهِ وَٱلرَّسُولِۖ فَٱتَّقُواْ ٱللَّهَ وَأَصۡلِحُواْ ذَاتَ بَيۡنِكُمۡۖ وَأَطِيعُواْ ٱللَّهَ وَرَسُولَهُۥٓ إِن كُنتُم مُّؤۡمِنِينَ ١

2. ಅಲ್ಲಾಹನ ಹೆಸರು ಹೇಳಿದಾಗ ಯಾರ ಹೃದಯಗಳು ಭಯದಿಂದ ನಡುಗುತ್ತದೋ, ಅವನ ವಚನಗಳನ್ನು ಪಠಿಸಲಾದರೆ ಯಾರ ವಿಶ್ವಾಸವು ಅಧಿಕವಾಗುತ್ತದೋ ಮತ್ತು ಯಾರು ತಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ಭರವಸೆಯಿಡುತ್ತಾರೋ ಅವರೇ ಸತ್ಯವಿಶ್ವಾಸಿಗಳು.

إِنَّمَا ٱلۡمُؤۡمِنُونَ ٱلَّذِينَ إِذَا ذُكِرَ ٱللَّهُ وَجِلَتۡ قُلُوبُهُمۡ وَإِذَا تُلِيَتۡ عَلَيۡهِمۡ ءَايَٰتُهُۥ زَادَتۡهُمۡ إِيمَٰنٗا وَعَلَىٰ رَبِّهِمۡ يَتَوَكَّلُونَ ٢

3. ಅವರು ನಮಾಝನ್ನು ಸಂಸ್ಥಾಪಿಸುವವರು ಮತ್ತು ನಾವು ಒದಗಿಸಿದ ಧನದಿಂದ ಖರ್ಚು ಮಾಡುವವರು.

ٱلَّذِينَ يُقِيمُونَ ٱلصَّلَوٰةَ وَمِمَّا رَزَقۡنَٰهُمۡ يُنفِقُونَ ٣

4. ಅವರೇ ನಿಜವಾದ ಸತ್ಯವಿಶ್ವಾಸಿಗಳು. ಅವರಿಗೆ ಅವರ ಪರಿಪಾಲಕನ (ಅಲ್ಲಾಹನ) ಬಳಿ ಉನ್ನತ ಸ್ಥಾನಮಾನಗಳು, ಕ್ಷಮೆ ಮತ್ತು ಗೌರವಾರ್ಹ ಉಪಜೀವನವಿದೆ.

أُوْلَٰٓئِكَ هُمُ ٱلۡمُؤۡمِنُونَ حَقّٗاۚ لَّهُمۡ دَرَجَٰتٌ عِندَ رَبِّهِمۡ وَمَغۡفِرَةٞ وَرِزۡقٞ كَرِيمٞ ٤

5. ಅದು ಹೇಗೆಂದರೆ, ನಿಮ್ಮ ಪರಿಪಾಲಕ (ಅಲ್ಲಾಹು) ನಿಮ್ಮನ್ನು ನಿಮ್ಮ ಮನೆಯಿಂದ ಸತ್ಯದೊಂದಿಗೆ ಹೊರಡಿಸಿದಂತೆ. ನಿಶ್ಚಯವಾಗಿಯೂ ಸತ್ಯವಿಶ್ವಾಸಿಗಳಲ್ಲಿ ಒಂದು ಗುಂಪಿಗೆ ಅದು ಇಷ್ಟವಿರಲಿಲ್ಲ.

كَمَآ أَخۡرَجَكَ رَبُّكَ مِنۢ بَيۡتِكَ بِٱلۡحَقِّ وَإِنَّ فَرِيقٗا مِّنَ ٱلۡمُؤۡمِنِينَ لَكَٰرِهُونَ ٥

6. ಯುದ್ಧವು ಸಂಭವಿಸುತ್ತದೆಯೆಂದು ಸ್ಪಷ್ಟವಾದ ಬಳಿಕವೂ ಅವರು ನಿಮ್ಮೊಡನೆ ಅದರ ಬಗ್ಗೆ ತರ್ಕಿಸುತ್ತಾರೆ. ಸಾವನ್ನು ನೋಡುತ್ತಿರುವಂತೆಯೇ ಅವರನ್ನು ಅದಕ್ಕೆ ಸಾಗಿಸಲಾಗುತ್ತಿದೆಯೋ ಎಂಬಂತೆ.

يُجَٰدِلُونَكَ فِي ٱلۡحَقِّ بَعۡدَ مَا تَبَيَّنَ كَأَنَّمَا يُسَاقُونَ إِلَى ٱلۡمَوۡتِ وَهُمۡ يَنظُرُونَ ٦

[1] ಯುದ್ಧಾರ್ಜಿತ ಸೊತ್ತುಗಳು ಎಂದರೆ ಸತ್ಯನಿಷೇಧಿಗಳೊಡನೆ ಯುದ್ಧ ಮಾಡಿ ಗೆದ್ದಾಗ ಸಿಗುವ ಸೊತ್ತುಗಳು.

[2] ಯುದ್ಧಾರ್ಜಿತ ಸೊತ್ತುಗಳು ಅಲ್ಲಾಹನಿಗೆ ಮತ್ತು ಸಂದೇಶವಾಹಕರಿಗೆ ಸೇರಿದ್ದು. ಅವುಗಳನ್ನು ಯೋಧರು ಮನಬಂದಂತೆ ಹಂಚಿಕೊಳ್ಳುವಂತಿಲ್ಲ. ಬದಲಿಗೆ, ಅಲ್ಲಾಹು ಮತ್ತು ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಆಜ್ಞಾಪಿಸಿದಂತೆ ಹಂಚಿಕೊಳ್ಳಬೇಕಾಗಿದೆ.

7. ಎರಡು ಗುಂಪುಗಳಲ್ಲಿ ಒಂದನ್ನು ನಿಮ್ಮ ವಶಕ್ಕೆ ನೀಡುತ್ತೇನೆಂದು ಅಲ್ಲಾಹು ನಿಮಗೆ ಆಶ್ವಾಸನೆ ನೀಡಿದ ಸಂದರ್ಭ(ವನ್ನು ಸ್ಮರಿಸಿ). ನಿಶ್ಶಸ್ತ್ರ ಗುಂಪು ನಿಮ್ಮ ವಶಕ್ಕೆ ಬರಬೇಕೆಂದು ನೀವು ಬಯಸುತ್ತೀರಿ. ಆದರೆ ಅಲ್ಲಾಹು ತನ್ನ ವಚನಗಳ ಮೂಲಕ ಸತ್ಯವನ್ನು ಸ್ಥಾಪಿಸಲು ಮತ್ತು ಸತ್ಯನಿಷೇಧಿಗಳನ್ನು ಬೇರು ಸಹಿತ ನಿರ್ನಾಮ ಮಾಡಲು ಬಯಸುತ್ತಿದ್ದನು.[1]

وَإِذۡ يَعِدُكُمُ ٱللَّهُ إِحۡدَى ٱلطَّآئِفَتَيۡنِ أَنَّهَا لَكُمۡ وَتَوَدُّونَ أَنَّ غَيۡرَ ذَاتِ ٱلشَّوۡكَةِ تَكُونُ لَكُمۡ وَيُرِيدُ ٱللَّهُ أَن يُحِقَّ ٱلۡحَقَّ بِكَلِمَٰتِهِۦ وَيَقۡطَعَ دَابِرَ ٱلۡكَٰفِرِينَ ٧

8. ಅವನು ಸತ್ಯವನ್ನು ಸ್ಥಾಪಿಸಲು ಮತ್ತು ಅಸತ್ಯವನ್ನು ನಿರ್ಮೂಲನ ಮಾಡಲು (ಬಯಸಿದ್ದನು). ಅಪರಾಧಿಗಳು ಎಷ್ಟು ದ್ವೇಷಿಸಿದರೂ ಸಹ.

لِيُحِقَّ ٱلۡحَقَّ وَيُبۡطِلَ ٱلۡبَٰطِلَ وَلَوۡ كَرِهَ ٱلۡمُجۡرِمُونَ ٨

9. ನೀವು ನಿಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ಸಹಾಯ ಯಾಚಿಸುತ್ತಿದ್ದ ಸಂದರ್ಭ(ವನ್ನು ಸ್ಮರಿಸಿ). ಆಗ, “ನಾನು ಒಂದು ಸಾವಿರ ದೇವದೂತರುಗಳನ್ನು ನಿರಂತರವಾಗಿ ಕಳುಹಿಸುವ ಮೂಲಕ ನಿಮಗೆ ಸಹಾಯ ಮಾಡುವೆನು” ಎಂದು ಅವನು ನಿಮಗೆ ಉತ್ತರವಿತ್ತನು.

إِذۡ تَسۡتَغِيثُونَ رَبَّكُمۡ فَٱسۡتَجَابَ لَكُمۡ أَنِّي مُمِدُّكُم بِأَلۡفٖ مِّنَ ٱلۡمَلَٰٓئِكَةِ مُرۡدِفِينَ ٩

10. ಅಲ್ಲಾಹು ಅದನ್ನೊಂದು ಶುಭ ಸುದ್ದಿಯಾಗಿ ಮಾಡಿದನು. ಅದರಿಂದ ನಿಮ್ಮ ಹೃದಯಗಳು ಶಾಂತವಾಗುವುದಕ್ಕಾಗಿ. ಸಹಾಯವು ಅಲ್ಲಾಹನಿಂದಲ್ಲದೆ ಬೇರೆ ಯಾರಿಂದಲೂ ದೊರೆಯುವುದಿಲ್ಲ. ನಿಶ್ಚಯವಾಗಿಯೂ ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَمَا جَعَلَهُ ٱللَّهُ إِلَّا بُشۡرَىٰ وَلِتَطۡمَئِنَّ بِهِۦ قُلُوبُكُمۡۚ وَمَا ٱلنَّصۡرُ إِلَّا مِنۡ عِندِ ٱللَّهِۚ إِنَّ ٱللَّهَ عَزِيزٌ حَكِيمٌ ١٠

11. (ನೀವು ಶತ್ರುಗಳ ಬಗ್ಗೆ ಭಯಪಡದಿರಲು) ಅವನು ತನ್ನ ಕಡೆಯ ಸುರಕ್ಷೆಯಾಗಿ ನಿಮ್ಮನ್ನು ಮಂಪರಿನಿಂದ ಆವರಿಸಿಕೊಂಡ ಸಂದರ್ಭ(ವನ್ನು ಸ್ಮರಿಸಿ). ನಿಮ್ಮನ್ನು ಶುದ್ಧೀಕರಿಸಲು, ನಿಮ್ಮಿಂದ ಶೈತಾನನ ಕೊಳೆಯನ್ನು (ದುಷ್ಪ್ರೇರಣೆಗಳನ್ನು) ನಿವಾರಿಸಲು, ನಿಮ್ಮ ಹೃದಯಗಳನ್ನು ಸ್ಥೈರ್ಯದಿಂದ ಹಿಡಿದಿಡಲು ಮತ್ತು ನಿಮ್ಮ ಪಾದಗಳನ್ನು ದೃಢವಾಗಿ ನಿಲ್ಲಿಸಲು ಅವನು ಆಕಾಶದಿಂದ ಮಳೆಯನ್ನು ಸುರಿಸಿದನು.

إِذۡ يُغَشِّيكُمُ ٱلنُّعَاسَ أَمَنَةٗ مِّنۡهُ وَيُنَزِّلُ عَلَيۡكُم مِّنَ ٱلسَّمَآءِ مَآءٗ لِّيُطَهِّرَكُم بِهِۦ وَيُذۡهِبَ عَنكُمۡ رِجۡزَ ٱلشَّيۡطَٰنِ وَلِيَرۡبِطَ عَلَىٰ قُلُوبِكُمۡ وَيُثَبِّتَ بِهِ ٱلۡأَقۡدَامَ ١١

12. “ನಿಶ್ಚಯವಾಗಿಯೂ ನಾನು ನಿಮ್ಮ ಜೊತೆಗಿದ್ದೇನೆ. ನೀವು ಸತ್ಯವಿಶ್ವಾಸಿಗಳಿಗೆ ಶಕ್ತಿಯನ್ನು ನೀಡಿರಿ. ಸತ್ಯನಿಷೇಧಿಗಳ ಹೃದಯಗಳಲ್ಲಿ

إِذۡ يُوحِي رَبُّكَ إِلَى ٱلۡمَلَٰٓئِكَةِ أَنِّي مَعَكُمۡ فَثَبِّتُواْ ٱلَّذِينَ ءَامَنُواْۚ سَأُلۡقِي فِي قُلُوبِ ٱلَّذِينَ

[1] ಕುರೈಷರ ವ್ಯಾಪಾರ ತಂಡವನ್ನು (ನಿಶ್ಶಸ್ತ್ರ ಗುಂಪನ್ನು) ಅಥವಾ ಕುರೈಷ್ ಸೈನ್ಯವನ್ನು ನಿಮ್ಮ ವಶಕ್ಕೆ ನೀಡುತ್ತೇನೆಂದು ಅಲ್ಲಾಹು ಪ್ರವಾದಿಯವರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮಾತು ಕೊಟ್ಟಿದ್ದನು. ಕುರೈಷರ ವ್ಯಾಪಾರ ತಂಡದ ಮೇಲೆ ದಾಳಿ ಮಾಡಿ ವಶಪಡಿಸುವುದಕ್ಕೆ ಯುದ್ಧದ ಅಗತ್ಯವಿಲ್ಲದ್ದರಿಂದ ಮುಸಲ್ಮಾನರು ಅದನ್ನೇ ಬಯಸಿದ್ದರು. ಆದರೆ ಅಲ್ಲಾಹನ ಉದ್ದೇಶವು ಸತ್ಯ ಮತ್ತು ಅಸತ್ಯವನ್ನು ನಿರ್ಣಾಯಕವಾಗಿ ಬೇರ್ಪಡಿಸಿ ತೋರಿಸುವ ಬದ್ರ್ ಯುದ್ಧ ನಡೆಯಬೇಕು ಎಂಬುದಾಗಿತ್ತು.

كَفَرُواْ ٱلرُّعۡبَ فَٱضۡرِبُواْ فَوۡقَ ٱلۡأَعۡنَاقِ
وَٱضۡرِبُواْ مِنۡهُمۡ كُلَّ بَنَانٖ ١٢

ನಾನು ಭೀತಿಯನ್ನು ಹಾಕುತ್ತೇನೆ. ನೀವು ಅವರ ಕೊರಳುಗಳ ಮೇಲೆ ಹೊಡೆಯಿರಿ ಮತ್ತು ಅವರ ಎಲ್ಲಾ ಬೆರಳುಗಳ ತುದಿಗಳಿಗೂ ಹೊಡೆಯಿರಿ" ಎಂದು ನಿಮ್ಮ ಪರಿಪಾಲಕನು (ಅಲ್ಲಾಹು) ದೇವದೂತರುಗಳಿಗೆ ದಿವ್ಯಪ್ರೇರಣೆ ನೀಡಿದ ಸಂದರ್ಭ.

---

ذَٰلِكَ بِأَنَّهُمۡ شَآقُّواْ ٱللَّهَ وَرَسُولَهُۥۚ وَمَن يُشَاقِقِ
ٱللَّهَ وَرَسُولَهُۥ فَإِنَّ ٱللَّهَ شَدِيدُ ٱلۡعِقَابِ ١٣

13. ಅದೇಕೆಂದರೆ ಅವರು (ಸತ್ಯನಿಷೇಧಿಗಳು) ಅಲ್ಲಾಹು ಮತ್ತು ಅವನ ಸಂದೇಶವಾಹಕರಿಗೆ ವಿರುದ್ಧವಾಗಿ ಸಾಗಿದರು. ಯಾರು ಅಲ್ಲಾಹನಿಗೆ ಮತ್ತು ಅವನ ಸಂದೇಶವಾಹಕರಿಗೆ ವಿರುದ್ಧವಾಗಿ ಸಾಗುತ್ತಾರೋ—ನಿಶ್ಚಯವಾಗಿಯೂ ಅಲ್ಲಾಹು ಅವರನ್ನು ಅತಿಕಠೋರವಾಗಿ ಶಿಕ್ಷಿಸುತ್ತಾನೆ.

---

ذَٰلِكُمۡ فَذُوقُوهُ وَأَنَّ لِلۡكَٰفِرِينَ
عَذَابَ ٱلنَّارِ ١٤

14. ಅದೇ ನಿಮಗಿರುವ ಶಿಕ್ಷೆ. ಅದರ ರುಚಿಯನ್ನು ನೋಡಿರಿ. ನಿಶ್ಚಯವಾಗಿಯೂ ಸತ್ಯನಿಷೇಧಿಗಳಿಗೆ ನರಕ ಶಿಕ್ಷೆಯಿದೆ.

---

يَٰٓأَيُّهَا ٱلَّذِينَ ءَامَنُوٓاْ إِذَا لَقِيتُمُ ٱلَّذِينَ كَفَرُواْ
زَحۡفٗا فَلَا تُوَلُّوهُمُ ٱلۡأَدۡبَارَ ١٥

15. ಓ ಸತ್ಯವಿಶ್ವಾಸಿಗಳೇ! ನೀವು ಯುದ್ಧದಲ್ಲಿ ಸತ್ಯನಿಷೇಧಿಗಳನ್ನು ಮುಖಾಮುಖಿಯಾದರೆ ಬೆನ್ನು ತೋರಿಸಿ ಓಡಬೇಡಿ.

---

وَمَن يُوَلِّهِمۡ يَوۡمَئِذٖ دُبُرَهُۥٓ إِلَّا مُتَحَرِّفٗا لِّقِتَالٍ
أَوۡ مُتَحَيِّزًا إِلَىٰ فِئَةٖ فَقَدۡ بَآءَ بِغَضَبٖ مِّنَ ٱللَّهِ
وَمَأۡوَىٰهُ جَهَنَّمُۖ وَبِئۡسَ ٱلۡمَصِيرُ ١٦

16. ಯುದ್ಧತಂತ್ರದ ಭಾಗವಾಗಿ ತಟ್ಟನೆ ಬದಿಗೆ ಸರಿಯುವುದು, ಅಥವಾ ಇನ್ನೊಂದು ತುಕಡಿಯನ್ನು ಸೇರುವುದು ಮುಂತಾದ ಕಾರಣಗಳಿಂದಲ್ಲದೆ ಯಾರು ಆ ದಿನ (ಯುದ್ಧದ ದಿನ) ಬೆನ್ನು ತೋರಿಸಿ ಓಡುತ್ತಾರೋ ಅವರು ಅಲ್ಲಾಹನ ಕೋಪಕ್ಕೆ ಪಾತ್ರರಾಗಿಯೇ ಮರಳುತ್ತಾರೆ. ಅವರ ವಾಸಸ್ಥಳ ನರಕವಾಗಿದೆ. ಅದು ಬಹಳ ಕೆಟ್ಟ ಗಮ್ಯಸ್ಥಾನವಾಗಿದೆ.

---

فَلَمۡ تَقۡتُلُوهُمۡ وَلَٰكِنَّ ٱللَّهَ قَتَلَهُمۡۚ وَمَا رَمَيۡتَ
إِذۡ رَمَيۡتَ وَلَٰكِنَّ ٱللَّهَ رَمَىٰ وَلِيُبۡلِيَ ٱلۡمُؤۡمِنِينَ
مِنۡهُ بَلَآءً حَسَنًاۚ إِنَّ ٱللَّهَ سَمِيعٌ عَلِيمٞ ١٧

17. ನೀವು ಅವರನ್ನು ಕೊಲ್ಲಲಿಲ್ಲ. ಆದರೆ ಅಲ್ಲಾಹು ಅವರನ್ನು ಕೊಂದನು.[1] ನೀವು ಎಸೆದಾಗ (ವಾಸ್ತವದಲ್ಲಿ) ನೀವು ಎಸೆದಿರಲಿಲ್ಲ, ಬದಲಿಗೆ, ಅಲ್ಲಾಹು ಎಸೆದಿದ್ದನು.[2] ಅಲ್ಲಾಹು ತನ್ನ ವತಿಯ ಒಂದು ಸುಂದರ ಪರೀಕ್ಷೆಯ ಮೂಲಕ ಸತ್ಯ-ವಿಶ್ವಾಸಿಗಳನ್ನು ಪರೀಕ್ಷಿಸುವುದಕ್ಕಾಗಿ ಹೀಗೆ ಮಾಡಿದ್ದನು. ನಿಶ್ಚಯವಾಗಿಯೂ ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

---

[1] ಬದ್ರ್ ಯುದ್ಧದಲ್ಲಿ ನೀವು ಸತ್ಯನಿಷೇಧಿಗಳನ್ನು ಕೊಂದದ್ದು ನಿಮ್ಮ ಸಾಧನೆ ಎಂದು ಭಾವಿಸಬೇಡಿ. ಅಲ್ಲ, ಬದಲಿಗೆ ಅಲ್ಲಾಹು ನಿಮಗೆ ಸಹಾಯ ಮಾಡಿದ್ದರಿಂದಲೇ ನಿಮಗೆ ಈ ಶಕ್ತಿಯು ದೊರೆತಿದೆ. ಆದ್ದರಿಂದ, ವಾಸ್ತವವಾಗಿ ಅವರನ್ನು ಕೊಂದದ್ದು ಅಲ್ಲಾಹನಾಗಿದ್ದನು.

[2] ಬದ್ರ್ ಯುದ್ಧದಲ್ಲಿ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ವೈರಿಗಳ ಮೇಲೆ ಒಂದು ಹಿಡಿ ಮರಳನ್ನು ಎಸೆದರು. ಅವರು ಎಸೆದ ಈ ಮರಳನ್ನು ಅಲ್ಲಾಹು ವೈರಿಗಳ ಮುಖ ಮತ್ತು ಕಣ್ಣುಗಳನ್ನು ತಲುಪುವಂತೆ ಮಾಡಿ ಅವರನ್ನು ಘಾಸಿಗೊಳಿಸಿ-ದ್ದನು. ಇದರಿಂದ ಅವರಿಗೆ ಏನೂ ಕಾಣದಂತಾಯಿತು.

18. ಅವೆಲ್ಲವೂ ಅಲ್ಲಾಹನೇ ಮಾಡಿದ್ದು. ನಿಶ್ಚಯವಾಗಿಯೂ ಅಲ್ಲಾಹು ಸತ್ಯನಿಷೇಧಿಗಳ ತಂತ್ರವನ್ನು ದುರ್ಬಲಗೊಳಿಸುತ್ತಾನೆ.

ذَٰلِكُمْ وَأَنَّ ٱللَّهَ مُوهِنُ كَيْدِ ٱلْكَٰفِرِينَ ﴿١٨﴾

19. ನೀವು (ಸತ್ಯನಿಷೇಧಿಗಳು) ತೀರ್ಪನ್ನು ಬಯಸಿದ್ದೇ ಆದರೆ ಇಗೋ ಆ ತೀರ್ಪು (ಸೋಲು) ಬಂದುಬಿಟ್ಟಿದೆ.[1] ನೀವು (ಯುದ್ಧವನ್ನು) ನಿಲ್ಲಿಸುವುದಾದರೆ ಅದು ನಿಮಗೇ ಒಳ್ಳೆಯದು. ನೀವು ಪುನಃ (ಯುದ್ಧಕ್ಕೆ) ಮರಳುವುದಾದರೆ ನಾವು ಕೂಡ ಮರಳುವೆವು. ನಿಮ್ಮ ಸೈನ್ಯ ಎಷ್ಟು ದೊಡ್ಡದಿದ್ದರೂ ಅದರಿಂದ ನಿಮಗೇನೂ ಪ್ರಯೋಜನವಿಲ್ಲ. ನಿಶ್ಚಯವಾಗಿಯೂ ಅಲ್ಲಾಹು ಸತ್ಯವಿಶ್ವಾಸಿಗಳ ಜೊತೆಗಿದ್ದಾನೆ.

إِن تَسْتَفْتِحُوا۟ فَقَدْ جَآءَكُمُ ٱلْفَتْحُ ۖ وَإِن تَنتَهُوا۟ فَهُوَ خَيْرٌ لَّكُمْ ۖ وَإِن تَعُودُوا۟ نَعُدْ وَلَن تُغْنِىَ عَنكُمْ فِئَتُكُمْ شَيْـًٔا وَلَوْ كَثُرَتْ وَأَنَّ ٱللَّهَ مَعَ ٱلْمُؤْمِنِينَ ﴿١٩﴾

20. ಓ ಸತ್ಯವಿಶ್ವಾಸಿಗಳೇ! ನೀವು ಅಲ್ಲಾಹು ಮತ್ತು ಅವನ ಸಂದೇಶವಾಹಕರ ಆಜ್ಞಾಪಾಲನೆ ಮಾಡಿರಿ. (ಅವರ ಆಜ್ಞೆಗಳನ್ನು) ಕೇಳುತ್ತಾ ಅವರಿಂದ ಹಿಂದೆ ಸರಿಯಬೇಡಿ.

يَٰٓأَيُّهَا ٱلَّذِينَ ءَامَنُوٓا۟ أَطِيعُوا۟ ٱللَّهَ وَرَسُولَهُۥ وَلَا تَوَلَّوْا۟ عَنْهُ وَأَنتُمْ تَسْمَعُونَ ﴿٢٠﴾

21. ನಾವು ಕೇಳಿದೆವು ಎಂದು ಹೇಳಿ ಏನೂ ಕೇಳದ ಜನರಂತೆ ನೀವಾಗಬೇಡಿ.

وَلَا تَكُونُوا۟ كَٱلَّذِينَ قَالُوا۟ سَمِعْنَا وَهُمْ لَا يَسْمَعُونَ ﴿٢١﴾

22. ನಿಶ್ಚಯವಾಗಿಯೂ ಅಲ್ಲಾಹನ ದೃಷ್ಟಿಯಲ್ಲಿ ಜೀವಿಗಳಲ್ಲೇ ಅತ್ಯಂತ ಕೀಳಾಗಿರುವವರು (ಸತ್ಯವನ್ನು) ಅರ್ಥಮಾಡಿಕೊಳ್ಳದ ಕಿವುಡರು ಮತ್ತು ಮೂಕರಾಗಿದ್ದಾರೆ.

إِنَّ شَرَّ ٱلدَّوَآبِّ عِندَ ٱللَّهِ ٱلصُّمُّ ٱلْبُكْمُ ٱلَّذِينَ لَا يَعْقِلُونَ ﴿٢٢﴾

23. ಅವರು (ಸತ್ಯವನ್ನು) ಕೇಳುವುದರಲ್ಲಿ ಒಳಿತಿದೆಯೆಂದು ಅಲ್ಲಾಹು ತಿಳಿದಿದ್ದರೆ ಅವರು ಅದನ್ನು ಕೇಳುವಂತೆ ಅವನು ಮಾಡುತ್ತಿದ್ದನು. ಇನ್ನು (ಅವರ ಇಚ್ಛೆಗೆ ವಿರುದ್ಧವಾಗಿ) ಅವರು ಅದನ್ನು ಕೇಳುವಂತೆ ಮಾಡಿದರೂ ಸಹ ಅವರು ಅದನ್ನು ಲೆಕ್ಕಿಸದೆ ವಿಮುಖರಾಗುತ್ತಿದ್ದರು.

وَلَوْ عَلِمَ ٱللَّهُ فِيهِمْ خَيْرًا لَّأَسْمَعَهُمْ ۖ وَلَوْ أَسْمَعَهُمْ لَتَوَلَّوا۟ وَّهُم مُّعْرِضُونَ ﴿٢٣﴾

24. ಓ ಸತ್ಯವಿಶ್ವಾಸಿಗಳೇ! ನಿಮಗೆ ಜೀವ ತುಂಬುವ ವಿಷಯಕ್ಕೆ ಅಲ್ಲಾಹು ಮತ್ತು ಅವನ ಸಂದೇಶವಾಹಕರು ನಿಮ್ಮನ್ನು ಕರೆದರೆ ಅವರಿಗೆ ಉತ್ತರ ನೀಡಿರಿ. ತಿಳಿಯಿರಿ! ನಿಶ್ಚಯವಾಗಿಯೂ ಅಲ್ಲಾಹು ಮನುಷ್ಯನ ಮತ್ತು ಅವನ ಹೃದಯದ ನಡುವೆ ಪರದೆಯಾಗಿ ಬರುತ್ತಾನೆ. ನಿಮ್ಮನ್ನು ಅವನ ಬಳಿಗೇ ಒಟ್ಟುಗೂಡಿಸಲಾಗುತ್ತದೆ.

يَٰٓأَيُّهَا ٱلَّذِينَ ءَامَنُوا۟ ٱسْتَجِيبُوا۟ لِلَّهِ وَلِلرَّسُولِ إِذَا دَعَاكُمْ لِمَا يُحْيِيكُمْ ۖ وَٱعْلَمُوٓا۟ أَنَّ ٱللَّهَ يَحُولُ بَيْنَ ٱلْمَرْءِ وَقَلْبِهِۦ وَأَنَّهُۥٓ إِلَيْهِ تُحْشَرُونَ ﴿٢٤﴾

---

[1] ಅಬೂಜಹಲ್ ಸೇರಿದಂತೆ ಸತ್ಯನಿಷೇಧಿಗಳು ಮಕ್ಕಾದಿಂದ ಯುದ್ಧಕ್ಕೆ ಹೊರಡುವಾಗ ಕಅಬಾಲಯದ ಚಿಲಕವನ್ನು ಹಿಡಿದು ಪ್ರಾರ್ಥಿಸಿದರು: "ಓ ಅಲ್ಲಾಹ್! ನಮ್ಮಿಬ್ಬರ ಪೈಕಿ ನಿನಗೆ ಅವಿಧೇಯರಾಗಿರುವವರು ಮತ್ತು ಕುಟುಂಬ ಸಂಬಂಧಗಳನ್ನು ಕಡಿಯುವವರು ಯಾರೋ ಅವರನ್ನು ನೀನು ಈ ಯುದ್ಧದಲ್ಲಿ ಸೋಲಿಸು." ಅವರ ದೃಷ್ಟಿಯಲ್ಲಿ ಮುಸಲ್ಮಾನರು ಅವಿಧೇಯರು ಮತ್ತು ಕುಟುಂಬ ಸಂಬಂಧ ಕಡಿಯುವವರಾಗಿದ್ದರು. ಆದರೆ ಯುದ್ಧದಲ್ಲಿ ಅಲ್ಲಾಹು ಮುಸಲ್ಮಾನರಿಗೆ ಜಯವನ್ನು ನೀಡಿ ಸತ್ಯನಿಷೇಧಿಗಳು ಏನು ಬೇಡಿದ್ದರೋ ಅದನ್ನೇ ದಯಪಾಲಿಸಿದ್ದನು.

**25.** ಒಂದು ಪರೀಕ್ಷೆಯ (ಶಿಕ್ಷೆಯ) ಬಗ್ಗೆ ಜಾಗೃತರಾಗಿರಿ. (ಅದು ಎಂತಹ ಪರೀಕ್ಷೆಯೆಂದರೆ) ನಿಮ್ಮಲ್ಲಿ ಅಕ್ರಮವೆಸಗಿದವರಿಗೆ ಮಾತ್ರ ಅದು ಬಾಧಿಸುವುದಿಲ್ಲ. ತಿಳಿಯಿರಿ! ನಿಶ್ಚಯವಾಗಿಯೂ ಅಲ್ಲಾಹು ಅತಿಕಠೋರವಾಗಿ ಶಿಕ್ಷಿಸುತ್ತಾನೆ.

وَٱتَّقُواْ فِتۡنَةٗ لَّا تُصِيبَنَّ ٱلَّذِينَ ظَلَمُواْ مِنكُمۡ خَآصَّةٗۖ وَٱعۡلَمُوٓاْ أَنَّ ٱللَّهَ شَدِيدُ ٱلۡعِقَابِ ٢٥

---

**26.** ನೀವು ಭೂಮಿಯಲ್ಲಿ ದುರ್ಬಲರು ಮತ್ತು ಅಲ್ಪಸಂಖ್ಯಾತರಾ-ಗಿದ್ದ ಸಂದರ್ಭವನ್ನು ಸ್ಮರಿಸಿ. ಜನರು (ಶತ್ರುಗಳು) ನಿಮ್ಮನ್ನು ಅಪಹರಿಸುವರೋ ಎಂಬ ಭಯ ನಿಮ್ಮನ್ನು ಕಾಡುತ್ತಿತ್ತು. ನಂತರ ಅವನು ನಿಮಗೆ ಆಶ್ರಯವನ್ನು ಒದಗಿಸಿದನು, ತನ್ನ ಸಹಾಯದಿಂದ ನಿಮಗೆ ಶಕ್ತಿ ನೀಡಿದನು ಮತ್ತು ಶುದ್ಧ ವಸ್ತುಗಳನ್ನು ನಿಮಗೆ ಆಹಾರವಾಗಿ ನೀಡಿದನು. ನೀವು ಕೃತಜ್ಞರಾಗುವುದಕ್ಕಾಗಿ.

وَٱذۡكُرُوٓاْ إِذۡ أَنتُمۡ قَلِيلٞ مُّسۡتَضۡعَفُونَ فِي ٱلۡأَرۡضِ تَخَافُونَ أَن يَتَخَطَّفَكُمُ ٱلنَّاسُ فَـَٔاوَىٰكُمۡ وَأَيَّدَكُم بِنَصۡرِهِۦ وَرَزَقَكُم مِّنَ ٱلطَّيِّبَٰتِ لَعَلَّكُمۡ تَشۡكُرُونَ ٢٦

---

**27.** ಓ ಸತ್ಯವಿಶ್ವಾಸಿಗಳೇ! ನೀವು ಅಲ್ಲಾಹನಿಗೆ ಮತ್ತು ಸಂದೇಶವಾಹಕರಿಗೆ ವಿಶ್ವಾಸದ್ರೋಹ ಮಾಡಬೇಡಿ.[1] ನಿಮ್ಮ ಮೇಲೆ ವಿಶ್ವಾಸವಿಡಲಾದ ವಿಷಯಗಳಲ್ಲೂ ವಿಶ್ವಾಸದ್ರೋಹ ಮಾಡಬೇಡಿ. (ಅದರ ಫಲಿತಾಂಶವೇನೆಂದು) ನೀವು ತಿಳಿದಿದ್ದೂ ಸಹ.

يَٰٓأَيُّهَا ٱلَّذِينَ ءَامَنُواْ لَا تَخُونُواْ ٱللَّهَ وَٱلرَّسُولَ وَتَخُونُوٓاْ أَمَٰنَٰتِكُمۡ وَأَنتُمۡ تَعۡلَمُونَ ٢٧

---

**28.** ತಿಳಿಯಿರಿ! ನಿಶ್ಚಯವಾಗಿಯೂ ನಿಮ್ಮ ಸಂಪತ್ತು ಮತ್ತು ನಿಮ್ಮ ಮಕ್ಕಳು ನಿಮಗೊಂದು ಪರೀಕ್ಷೆಯಾಗಿದ್ದಾರೆ. ಮಹಾ ಪ್ರತಿಫಲವಿ-ರುವುದು ಅಲ್ಲಾಹನ ಬಳಿಯಲ್ಲಿ ಮಾತ್ರ.

وَٱعۡلَمُوٓاْ أَنَّمَآ أَمۡوَٰلُكُمۡ وَأَوۡلَٰدُكُمۡ فِتۡنَةٞ وَأَنَّ ٱللَّهَ عِندَهُۥٓ أَجۡرٌ عَظِيمٞ ٢٨

---

**29.** ಓ ಸತ್ಯವಿಶ್ವಾಸಿಗಳೇ! ನೀವು ಅಲ್ಲಾಹನನ್ನು ಭಯಪಡುವುದಾದರೆ ಅವನು ನಿಮಗೆ ಸತ್ಯಾಸತ್ಯವನ್ನು ವಿವೇಚಿಸಿ ತಿಳಿಯುವ ಶಕ್ತಿಯನ್ನು ನೀಡುವನು. ಅವನು ನಿಮ್ಮ ಪಾಪಗಳನ್ನು ಅಳಿಸುವನು ಮತ್ತು ನಿಮ್ಮನ್ನು ಕ್ಷಮಿಸುವನು. ಅಲ್ಲಾಹು ಮಹಾ ಔದಾರ್ಯದ ಒಡೆಯನಾಗಿದ್ದಾನೆ.

يَٰٓأَيُّهَا ٱلَّذِينَ ءَامَنُوٓاْ إِن تَتَّقُواْ ٱللَّهَ يَجۡعَل لَّكُمۡ فُرۡقَانٗا وَيُكَفِّرۡ عَنكُمۡ سَيِّـَٔاتِكُمۡ وَيَغۡفِرۡ لَكُمۡۗ وَٱللَّهُ ذُو ٱلۡفَضۡلِ ٱلۡعَظِيمِ ٢٩

---

**30.** ಸತ್ಯನಿಷೇಧಿಗಳು ನಿಮ್ಮನ್ನು ಸೆರೆ ಹಿಡಿಯಲು ಅಥವಾ ಕೊಲ್ಲಲು ಅಥವಾ ಊರಿನಿಂದ ಓಡಿಸಲು ಸಂಚು ರೂಪಿಸುತ್ತಿದ್ದ ಸಂದರ್ಭ. ಅವರು ಸಂಚು ರೂಪಿಸುತ್ತಾರೆ. ಅಲ್ಲಾಹು ಕೂಡ ಸಂಚು ರೂಪಿಸುತ್ತಾನೆ. ಸಂಚು ರೂಪಿಸುವುದರಲ್ಲಿ ಅಲ್ಲಾಹು ಅತಿಶ್ರೇಷ್ಠನಾಗಿದ್ದಾನೆ.

وَإِذۡ يَمۡكُرُ بِكَ ٱلَّذِينَ كَفَرُواْ لِيُثۡبِتُوكَ أَوۡ يَقۡتُلُوكَ أَوۡ يُخۡرِجُوكَۚ وَيَمۡكُرُونَ وَيَمۡكُرُ ٱللَّهُۖ وَٱللَّهُ خَيۡرُ ٱلۡمَٰكِرِينَ ٣٠

---

[1] ಅಲ್ಲಾಹನಿಗೆ ಮತ್ತು ಸಂದೇಶವಾಹಕರಿಗೆ ವಿಶ್ವಾಸದ್ರೋಹ ಮಾಡುವುದು ಎಂದರೆ ಜನರ ಮುಂಭಾಗದಲ್ಲಿ ಅವರ ಆಜ್ಞೆಗಳನ್ನು ಅನುಸರಿಸುವುದು ಮತ್ತು ಏಕಾಂಗಿಯಾಗಿರುವಾಗ ಅಥವಾ ಖಾಸಗಿ ಜೀವನದಲ್ಲಿ ಅವರ ಆಜ್ಞೆಗಳನ್ನು ಧಿಕ್ಕರಿಸುವುದು. ಅದೇ ರೀತಿ ಅಲ್ಲಾಹು ಮತ್ತು ಅವನ ಸಂದೇಶವಾಹಕರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಕಡ್ಡಾಯಗೊಳಿಸಿದ ಕಾರ್ಯವನ್ನು ಬಿಟ್ಟುಬಿಡುವುದು ಮತ್ತು ಅವರು ವಿರೋಧಿಸಿದ ಕಾರ್ಯವನ್ನು ಮಾಡುವುದು.

31. ಅವರಿಗೆ ನಮ್ಮ ವಚನಗಳನ್ನು ಪಠಿಸಲಾದಾಗ, ಅವರು ಹೇಳುತ್ತಾರೆ: "ನಾವು ಕೇಳಿದೆವು. ನಾವು ಇಚ್ಛಿಸಿದರೆ ಇದರಂತೆಯೇ ಹೇಳುವೆವು. ಇದು ಪ್ರಾಚೀನ ಜನರ ಕಟ್ಟುಕಥೆಗಳ-ಲ್ಲದೆ ಇನ್ನೇನೂ ಅಲ್ಲ."

وَإِذَا تُتۡلَىٰ عَلَيۡهِمۡ ءَايَٰتُنَا قَالُواْ قَدۡ سَمِعۡنَا لَوۡ نَشَآءُ لَقُلۡنَا مِثۡلَ هَٰذَآ إِنۡ هَٰذَآ إِلَّآ أَسَٰطِيرُ ٱلۡأَوَّلِينَ ٣١

32. ಅವರು (ಸತ್ಯನಿಷೇಧಿಗಳು) ಹೇಳಿದ ಸಂದರ್ಭ(ವನ್ನು ಸ್ಮರಿಸಿ): "ಓ ಅಲ್ಲಾಹ್! ಇದು ನಿನ್ನ ಕಡೆಯ ಸತ್ಯವಾಗಿದ್ದರೆ ನಮ್ಮ ಮೇಲೆ ಆಕಾಶದಿಂದ ಕಲ್ಲಿನ ಮಳೆಯನ್ನು ಸುರಿಸು ಅಥವಾ ನಮಗೆ ಯಾತನಾಮಯ ಶಿಕ್ಷೆಯನ್ನು ನೀಡು."

وَإِذۡ قَالُواْ ٱللَّهُمَّ إِن كَانَ هَٰذَا هُوَ ٱلۡحَقَّ مِنۡ عِندِكَ فَأَمۡطِرۡ عَلَيۡنَا حِجَارَةٗ مِّنَ ٱلسَّمَآءِ أَوِ ٱئۡتِنَا بِعَذَابٍ أَلِيمٖ ٣٢

33. ನೀವು ಅವರ ನಡುವೆಯಿರುವಾಗ ಅಲ್ಲಾಹು ಅವರನ್ನು ಶಿಕ್ಷಿಸುವುದಿಲ್ಲ. ಅವರು ಕ್ಷಮೆಯಾಚಿಸುತ್ತಿರುವ ತನಕ ಅಲ್ಲಾಹು ಅವರನ್ನು ಶಿಕ್ಷಿಸುವುದಿಲ್ಲ.

وَمَا كَانَ ٱللَّهُ لِيُعَذِّبَهُمۡ وَأَنتَ فِيهِمۡۚ وَمَا كَانَ ٱللَّهُ مُعَذِّبَهُمۡ وَهُمۡ يَسۡتَغۡفِرُونَ ٣٣

34. ಅಲ್ಲಾಹು ಅವರನ್ನೇಕೆ ಶಿಕ್ಷಿಸಬಾರದು? ಅವರು ಪವಿತ್ರ ಮಸೀದಿಯಿಂದ ಜನರನ್ನು ತಡೆಯುತ್ತಿದ್ದಾರೆ. ಅವರಂತೂ ಅದರ ಪರಿಪಾಲಕರಲ್ಲ. ದೇವಭಯವುಳ್ಳವರೇ ಅದರ ಪರಿಪಾಲಕರು. ಆದರೆ ಅವರಲ್ಲಿ ಹೆಚ್ಚಿನವರು ತಿಳಿಯುವುದಿಲ್ಲ.

وَمَا لَهُمۡ أَلَّا يُعَذِّبَهُمُ ٱللَّهُ وَهُمۡ يَصُدُّونَ عَنِ ٱلۡمَسۡجِدِ ٱلۡحَرَامِ وَمَا كَانُوٓاْ أَوۡلِيَآءَهُۥٓۚ إِنۡ أَوۡلِيَآؤُهُۥٓ إِلَّا ٱلۡمُتَّقُونَ وَلَٰكِنَّ أَكۡثَرَهُمۡ لَا يَعۡلَمُونَ ٣٤

35. ಭವನದಲ್ಲಿ (ಕಅಬಾಲಯದಲ್ಲಿ) ಅವರು ಮಾಡುವ ನಮಾಝ್ ಶಿಳ್ಳೆ ಹಾಕುವುದು ಮತ್ತು ಚಪ್ಪಾಳೆ ತಟ್ಟುವುದಕ್ಕೆ ಮಾತ್ರ ಸೀಮಿತವಾಗಿದೆ. ನೀವು ಸತ್ಯವನ್ನು ನಿಷೇಧಿಸಿದ ಕಾರಣ ಶಿಕ್ಷೆಯ ರುಚಿಯನ್ನು ನೋಡಿರಿ.

وَمَا كَانَ صَلَاتُهُمۡ عِندَ ٱلۡبَيۡتِ إِلَّا مُكَآءٗ وَتَصۡدِيَةٗۚ فَذُوقُواْ ٱلۡعَذَابَ بِمَا كُنتُمۡ تَكۡفُرُونَ ٣٥

36. ನಿಶ್ಚಯವಾಗಿಯೂ ಸತ್ಯನಿಷೇಧಿಗಳು ಅಲ್ಲಾಹನ ಮಾರ್ಗದಿಂದ (ಜನರನ್ನು) ತಡೆಯಲು ತಮ್ಮ ಧನವನ್ನು ಖರ್ಚು ಮಾಡುತ್ತಾರೆ. ಅವರು ಮುಂದೆಯೂ ಅದನ್ನು ಖರ್ಚು ಮಾಡುವರು. ನಂತರ ಅದು ಅವರಿಗೆ ವ್ಯಥೆಯಾಗಿ ಪರಿಣಮಿಸುವುದು. ನಂತರ ಅವರನ್ನು ಸದೆಬಡಿಯಲಾಗುವುದು. ಸತ್ಯನಿಷೇಧಿಗಳನ್ನು ನರಕಾಗ್ನಿಗೆ ಒಟ್ಟುಗೂಡಿಸಲಾಗುವುದು.

إِنَّ ٱلَّذِينَ كَفَرُواْ يُنفِقُونَ أَمۡوَٰلَهُمۡ لِيَصُدُّواْ عَن سَبِيلِ ٱللَّهِۚ فَسَيُنفِقُونَهَا ثُمَّ تَكُونُ عَلَيۡهِمۡ حَسۡرَةٗ ثُمَّ يُغۡلَبُونَۗ وَٱلَّذِينَ كَفَرُوٓاْ إِلَىٰ جَهَنَّمَ يُحۡشَرُونَ ٣٦

37. ಅದು ಅಲ್ಲಾಹು ಶುದ್ಧದಿಂದ ಹೊಲಸನ್ನು ಪ್ರತ್ಯೇಕಿಸುವುದ-ಕ್ಕಾಗಿ ಮತ್ತು ಹೊಲಸನ್ನು ಪರಸ್ಪರ ಒಟ್ಟುಗೂಡಿಸಿ, ನಂತರ ಅವೆಲ್ಲವನ್ನೂ ನರಕದಲ್ಲಿ ಹಾಕುವುದಕ್ಕಾಗಿದೆ. ಅವರೇ ನಷ್ಟಹೊಂದಿದವರು.

لِيَمِيزَ ٱللَّهُ ٱلۡخَبِيثَ مِنَ ٱلطَّيِّبِ وَيَجۡعَلَ ٱلۡخَبِيثَ بَعۡضَهُۥ عَلَىٰ بَعۡضٖ فَيَرۡكُمَهُۥ جَمِيعٗا فَيَجۡعَلَهُۥ فِي جَهَنَّمَۚ أُوْلَٰٓئِكَ هُمُ ٱلۡخَٰسِرُونَ ٣٧

38. ಸತ್ಯನಿಷೇಧಿಗಳೊಡನೆ, ಅವರು (ಸತ್ಯನಿಷೇಧದಿಂದ) ಹಿಂದೆ ಸರಿದರೆ, ಅವರು ಹಿಂದೆ ಮಾಡಿದ ದುಷ್ಕರ್ಮಗಳನ್ನು ಅವರಿಗೆ ಕ್ಷಮಿಸಲಾಗುವುದು ಎಂದು ಹೇಳಿರಿ. ಆದರೆ ಅವರು (ತಮ್ಮ ಹಿಂದಿನ ಸ್ಥಿತಿಗೇ) ಮರಳುವುದಾದರೆ, ಪೂರ್ವಜರ ವಿಷಯದಲ್ಲಿ (ಅಲ್ಲಾಹನ) ದಂಡನಾಕ್ರಮವು ಈಗಾಗಲೇ ಸಂಭವಿಸಿ ಬಿಟ್ಟಿದೆ.

قُل لِّلَّذِينَ كَفَرُوٓاْ إِن يَنتَهُواْ يُغۡفَرۡ لَهُم مَّا
قَدۡ سَلَفَ وَإِن يَعُودُواْ فَقَدۡ مَضَتۡ سُنَّتُ
ٱلۡأَوَّلِينَ ٣٨

39. ಕ್ಷೋಭೆ ನಿವಾರಣೆಯಾಗುವ ತನಕ ಮತ್ತು ಧರ್ಮವು ಸಂಪೂರ್ಣವಾಗಿ ಅಲ್ಲಾಹನಿಗಾಗುವ ತನಕ ಅವರೊಡನೆ ಯುದ್ಧ ಮಾಡಿರಿ. ಅವರು ಹಿಂದೆ ಸರಿದರೆ, ನಿಶ್ಚಯವಾಗಿಯೂ ಅಲ್ಲಾಹು ಅವರು ಮಾಡುವ ಕರ್ಮಗಳನ್ನು ನೋಡುತ್ತಿದ್ದಾನೆ.

وَقَٰتِلُوهُمۡ حَتَّىٰ لَا تَكُونَ فِتۡنَةٞ وَيَكُونَ
ٱلدِّينُ كُلُّهُۥ لِلَّهِۚ فَإِنِ ٱنتَهَوۡاْ فَإِنَّ ٱللَّهَ بِمَا
يَعۡمَلُونَ بَصِيرٞ ٣٩

40. ಅವರೇನಾದರೂ ಕಡೆಗಣಿಸಿದರೆ, ತಿಳಿಯಿರಿ! ನಿಶ್ಚಯವಾಗಿಯೂ ಅಲ್ಲಾಹು ನಿಮ್ಮ ರಕ್ಷಕನು. ಅವನು ಎಷ್ಟು ಉತ್ತಮ ರಕ್ಷಕ! ಎಷ್ಟು ಉತ್ತಮ ಸಹಾಯಕ!

وَإِن تَوَلَّوۡاْ فَٱعۡلَمُوٓاْ أَنَّ ٱللَّهَ مَوۡلَىٰكُمۡۚ نِعۡمَ
ٱلۡمَوۡلَىٰ وَنِعۡمَ ٱلنَّصِيرُ ٤٠

41. ತಿಳಿಯಿರಿ! ನೀವು (ಯುದ್ಧದಲ್ಲಿ) ಗಳಿಸಿದ ಯಾವುದೇ ವಸ್ತುವಿದ್ದರೂ, ಅದರ ಐದನೇ ಒಂದು ಭಾಗವು ಅಲ್ಲಾಹನಿಗೆ, ಸಂದೇಶವಾಹಕರಿಗೆ, ಅವರ ನಿಕಟ ಸಂಬಂಧಿಕರಿಗೆ, ಅನಾಥರಿಗೆ, ಬಡವರಿಗೆ ಮತ್ತು ಪ್ರಯಾಣಿಕರಿಗೆ ನೀಡತಕ್ಕದ್ದು.[1] ನೀವು ಅಲ್ಲಾಹನಲ್ಲಿ ಮತ್ತು ಸತ್ಯಾಸತ್ಯ ವಿವೇಚನೆಯ ದಿನದಂದು—ಎರಡು ಬಣಗಳು ಮುಖಾಮುಖಿಯಾದ ದಿನದಂದು—ನಮ್ಮ ದಾಸನಿಗೆ ನಾವು ಅವತೀರ್ಣಗೊಳಿಸಿದ ಸಂದೇಶದಲ್ಲಿ ವಿಶ್ವಾಸವಿಟ್ಟಿದ್ದರೆ. ಅಲ್ಲಾಹು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

وَٱعۡلَمُوٓاْ أَنَّمَا غَنِمۡتُم مِّن شَيۡءٖ فَأَنَّ لِلَّهِ
خُمُسَهُۥ وَلِلرَّسُولِ وَلِذِي ٱلۡقُرۡبَىٰ وَٱلۡيَتَٰمَىٰ
وَٱلۡمَسَٰكِينِ وَٱبۡنِ ٱلسَّبِيلِ إِن كُنتُمۡ ءَامَنتُم
بِٱللَّهِ وَمَآ أَنزَلۡنَا عَلَىٰ عَبۡدِنَا يَوۡمَ ٱلۡفُرۡقَانِ يَوۡمَ
ٱلۡتَقَى ٱلۡجَمۡعَانِۗ وَٱللَّهُ عَلَىٰ كُلِّ شَيۡءٖ قَدِيرٌ ٤١

42. ನೀವು ಕಣಿವೆಯಲ್ಲಿ (ಮದೀನಕ್ಕೆ) ಸಮೀಪವಿರುವ ತೀರದಲ್ಲಿ, ಅವರು (ಶತ್ರುಗಳು) ದೂರದ ತೀರದಲ್ಲಿ ಮತ್ತು ವ್ಯಾಪಾರ ತಂಡವು ನಿಮ್ಮ ಕೆಳಭಾಗದಲ್ಲಿದ್ದ ಸಂದರ್ಭ. ನೀವು ಯುದ್ಧಕ್ಕೆ ಸಮಯ ನಿಶ್ಚಯಿಸಿದ್ದರೆ, ಆ ನಿಶ್ಚಿತ ಸಮಯದ ಬಗ್ಗೆ ನಿಮ್ಮಲ್ಲಿ ಭಿನ್ನಮತ ತಲೆದೋರುತ್ತಿತ್ತು. ನಾಶವಾಗುವವನು ಸ್ಪಷ್ಟ ಸಾಕ್ಷ್ಯವನ್ನು ನೋಡಿಯೇ ನಾಶವಾಗಬೇಕು ಮತ್ತು ಬದುಕುಳಿಯುವವನು ಸ್ಪಷ್ಟ ಸಾಕ್ಷ್ಯವನ್ನು ನೋಡಿಯೇ

إِذۡ أَنتُم بِٱلۡعُدۡوَةِ ٱلدُّنۡيَا وَهُم بِٱلۡعُدۡوَةِ ٱلۡقُصۡوَىٰ
وَٱلرَّكۡبُ أَسۡفَلَ مِنكُمۡۚ وَلَوۡ تَوَاعَدتُّمۡ
لَٱخۡتَلَفۡتُمۡ فِي ٱلۡمِيعَٰدِ وَلَٰكِن لِّيَقۡضِيَ ٱللَّهُ
أَمۡرٗا كَانَ مَفۡعُولٗا لِّيَهۡلِكَ مَنۡ هَلَكَ عَنۢ بَيِّنَةٖ
وَيَحۡيَىٰ مَنۡ حَيَّ عَنۢ بَيِّنَةٖۗ وَإِنَّ ٱللَّهَ لَسَمِيعٌ
عَلِيمٌ ٤٢

[1] ಯುದ್ಧಾರ್ಜಿತ ಸೊತ್ತನ್ನು ಐದು ಭಾಗಗಳಾಗಿ ವಿಂಗಡಿಸಬೇಕು. ನಾಲ್ಕು ಭಾಗಗಳನ್ನು ಯೋಧರಿಗೆ ವಿತರಿಸಬೇಕು. ಉಳಿದ ಒಂದು ಭಾಗವನ್ನು ಪುನಃ ಐದು ಭಾಗಗಳಾಗಿ ವಿಂಗಡಿಸಿ, ಒಂದು ಭಾಗವನ್ನು ಸಂದೇಶವಾಹಕರಿಗೆ (ಅಂದರೆ ಧಾರ್ಮಿಕ ಕಾರ್ಯಗಳಿಗೆ), ಇನ್ನೊಂದನ್ನು ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಕುಟುಂಬಕ್ಕೆ (ಬನೂ ಹಾಶಿಮ್ ಮತ್ತು ಬನೂ ಮುತ್ತಲಿಬ್ ಕುಟುಂಬಗಳಿಗೆ), ಮೂರನೇ ಭಾಗವನ್ನು ಅನಾಥರಿಗೆ, ನಾಲ್ಕನೇ ಭಾಗವನ್ನು ಬಡವರಿಗೆ ಮತ್ತು ಕೊನೆಯ ಭಾಗವನ್ನು ಪ್ರಯಾಣಿಕರಿಗೆ ವಿತರಿಸಬೇಕು.

ಬದುಕುಳಿಯಬೇಕು ಎಂಬ ಈಗಾಗಲೇ ಮಾಡಿದ ತೀರ್ಮಾನವನ್ನು ಕಾರ್ಯರೂಪಕ್ಕೆ ತರಲು ಅಲ್ಲಾಹು ಹೀಗೆ ಮಾಡಿದನು. ನಿಶ್ಚಯವಾಗಿಯೂ ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

---

43. ಅಲ್ಲಾಹು ನಿಮ್ಮ ಕನಸಿನಲ್ಲಿ ಅವರನ್ನು ಕಡಿಮೆ ಸಂಖ್ಯೆಯಲ್ಲಿ ತೋರಿಸಿದ ಸಂದರ್ಭ(ವನ್ನು ಸ್ಮರಿಸಿ). ಅವನು ಅವರನ್ನು ದೊಡ್ಡ ಸಂಖ್ಯೆಯಲ್ಲಿ ತೋರಿಸಿದ್ದರೆ, ನೀವು ಎದೆಗುಂದುತ್ತಿದ್ದಿರಿ ಮತ್ತು (ಯುದ್ಧ ಮಾಡಬೇಕೋ ಎಂಬ) ವಿಷಯದಲ್ಲಿ ಭಿನ್ನಮತ ತಳೆಯುತ್ತಿದ್ದಿರಿ. ಆದರೆ ಅಲ್ಲಾಹು ನಿಮ್ಮನ್ನು ಕಾಪಾಡಿದನು. ನಿಶ್ಚಯವಾಗಿಯೂ ಅವನು ಹೃದಯಗಳಲ್ಲಿರುವುದನ್ನು ತಿಳಿಯುತ್ತಾನೆ.

إِذۡ يُرِيكَهُمُ ٱللَّهُ فِي مَنَامِكَ قَلِيلٗاۖ وَلَوۡ أَرَىٰكَهُمۡ كَثِيرٗا لَّفَشِلۡتُمۡ وَلَتَنَٰزَعۡتُمۡ فِي ٱلۡأَمۡرِ وَلَٰكِنَّ ٱللَّهَ سَلَّمَۚ إِنَّهُۥ عَلِيمُۢ بِذَاتِ ٱلصُّدُورِ ٤٣

---

44. ನೀವು ಅವರನ್ನು ಮುಖಾಮುಖಿಯಾದ ಸಂದರ್ಭದಲ್ಲಿ ಅವನು ನಿಮಗೆ ಅವರನ್ನು ಕಡಿಮೆ ಸಂಖ್ಯೆಯಲ್ಲಿ ಮತ್ತು ಅವರಿಗೆ ನಿಮ್ಮನ್ನು ಕಡಿಮೆ ಸಂಖ್ಯೆಯಲ್ಲಿ ತೋರಿಸಿಕೊಟ್ಟ ಸಂದರ್ಭ. ಇದೇಕೆಂದರೆ, ಅಲ್ಲಾಹು ಈಗಾಗಲೇ ಮಾಡಿದ ತೀರ್ಮಾನವನ್ನು ಕಾರ್ಯರೂಪಕ್ಕೆ ತರುವುದಕ್ಕಾಗಿ. ವಿಷಯಗಳೆಲ್ಲವೂ ಅಲ್ಲಾಹನ ಬಳಿಗೇ ಮರಳುತ್ತವೆ.

وَإِذۡ يُرِيكُمُوهُمۡ إِذِ ٱلۡتَقَيۡتُمۡ فِيٓ أَعۡيُنِكُمۡ قَلِيلٗا وَيُقَلِّلُكُمۡ فِيٓ أَعۡيُنِهِمۡ لِيَقۡضِيَ ٱللَّهُ أَمۡرٗا كَانَ مَفۡعُولٗاۗ وَإِلَى ٱللَّهِ تُرۡجَعُ ٱلۡأُمُورُ ٤٤

---

45. ಓ ಸತ್ಯವಿಶ್ವಾಸಿಗಳೇ! ನೀವು ವೈರಿಗಳಿಗೆ ಮುಖಾಮುಖಿಯಾದರೆ ದೃಢವಾಗಿ ನಿಲ್ಲಿರಿ ಮತ್ತು ಅಲ್ಲಾಹನನ್ನು ಅತ್ಯಧಿಕವಾಗಿ ಸ್ಮರಿಸಿರಿ. ನೀವು ಯಶಸ್ವಿಯಾಗುವುದಕ್ಕಾಗಿ.

يَٰٓأَيُّهَا ٱلَّذِينَ ءَامَنُوٓاْ إِذَا لَقِيتُمۡ فِئَةٗ فَٱثۡبُتُواْ وَٱذۡكُرُواْ ٱللَّهَ كَثِيرٗا لَّعَلَّكُمۡ تُفۡلِحُونَ ٤٥

---

46. ನೀವು ಅಲ್ಲಾಹು ಮತ್ತು ಅವನ ಸಂದೇಶವಾಹಕರ ಆಜ್ಞಾಪಾಲನೆ ಮಾಡಿರಿ. ಭಿನ್ನರಾಗಬೇಡಿ. ಹಾಗೇನಾದರೂ ಆದರೆ ನೀವು ಧೈರ್ಯಗೆಡುವಿರಿ ಮತ್ತು ನಿಮ್ಮ ಶಕ್ತಿ ಕುಸಿಯಬಹುದು. ಸ್ಥೈರ್ಯದಿಂದಿರಿ. ನಿಶ್ಚಯವಾಗಿಯೂ ಅಲ್ಲಾಹು ಸ್ಥೈರ್ಯವಂತ-ರನ್ನು ಪ್ರೀತಿಸುತ್ತಾನೆ.

وَأَطِيعُواْ ٱللَّهَ وَرَسُولَهُۥ وَلَا تَنَٰزَعُواْ فَتَفۡشَلُواْ وَتَذۡهَبَ رِيحُكُمۡۖ وَٱصۡبِرُوٓاْۚ إِنَّ ٱللَّهَ مَعَ ٱلصَّٰبِرِينَ ٤٦

---

47. ದರ್ಪದಿಂದ ಜನರ ಮುಂದೆ ಪ್ರದರ್ಶನ ಮಾಡುತ್ತಾ ಮತ್ತು ಅಲ್ಲಾಹನ ಮಾರ್ಗದಿಂದ (ಜನರನ್ನು) ತಡೆಯುವುದಕ್ಕಾಗಿ ತಮ್ಮ ಮನೆಗಳಿಂದ ಹೊರಟವರಂತೆ ನೀವಾಗಬೇಡಿ.[1] ಅವರು ಮಾಡುವುದನ್ನು ಅಲ್ಲಾಹು ಸೂಕ್ಷ್ಮವಾಗಿ ತಿಳಿಯುತ್ತಾನೆ.

وَلَا تَكُونُواْ كَٱلَّذِينَ خَرَجُواْ مِن دِيَٰرِهِم بَطَرٗا وَرِئَآءَ ٱلنَّاسِ وَيَصُدُّونَ عَن سَبِيلِ ٱللَّهِۚ وَٱللَّهُ بِمَا يَعۡمَلُونَ مُحِيطٞ ٤٧

---

[1] ಮಕ್ಕಾದ ಸತ್ಯನಿಷೇಧಿಗಳು ತಮ್ಮ ವ್ಯಾಪಾರ ತಂಡವನ್ನು ಕಾಪಾಡುವುದಕ್ಕಾಗಿ ಮತ್ತು ಮುಸಲ್ಮಾನರನ್ನು ನಿರ್ನಾಮ ಮಾಡುವುದಕ್ಕಾಗಿ ಮಕ್ಕಾದಿಂದ ಹೊರಟ ಸ್ಥಿತಿಯನ್ನು ಇಲ್ಲಿ ವಿವರಿಸಲಾಗಿದೆ.

48. ಶೈತಾನನು ಅವರಿಗೆ ಅವರ ಕರ್ಮಗಳನ್ನು ಅಲಂಕರಿಸಿ ತೋರಿಸಿದ ಸಂದರ್ಭ. ಅವನು (ಶೈತಾನನು) ಹೇಳಿದನು: "ಇಂದು ಜನರಲ್ಲಿ ಯಾರಿಗೂ ನಿಮ್ಮನ್ನು ಸದೆಬಡಿಯಲು ಸಾಧ್ಯವಿಲ್ಲ. ನಿಶ್ಚಯವಾಗಿಯೂ ನಾನು ನಿಮ್ಮ ರಕ್ಷಣೆಗಿದ್ದೇನೆ." ಆದರೆ ಎರಡು ಬಣಗಳು ಪರಸ್ಪರ ಮುಖಾಮುಖಿಯಾದಾಗ ಅವನು ಬೆನ್ನು ತಿರುಗಿಸಿ ಓಡುತ್ತಾ ಹೇಳಿದನು: "ನಾನು ನಿಮ್ಮಿಂದ ಸಂಪೂರ್ಣ ಮುಕ್ತನಾಗಿದ್ದೇನೆ. ನಿಮಗೆ ನೋಡಲು ಸಾಧ್ಯವಾಗದ ದೃಶ್ಯಗಳು ನನಗೆ ಕಾಣುತ್ತಿವೆ. ನಿಶ್ಚಯವಾಗಿಯೂ ನಾನು ಅಲ್ಲಾಹನನ್ನು ಭಯಪಡುತ್ತೇನೆ. ಅಲ್ಲಾಹು ಅತಿಕಠಿಣವಾಗಿ ಶಿಕ್ಷಿಸುವವನಾಗಿದ್ದಾನೆ."

وَإِذۡ زَيَّنَ لَهُمُ ٱلشَّيۡطَٰنُ أَعۡمَٰلَهُمۡ وَقَالَ لَا غَالِبَ لَكُمُ ٱلۡيَوۡمَ مِنَ ٱلنَّاسِ وَإِنِّي جَارٞ لَّكُمۡۖ فَلَمَّا تَرَآءَتِ ٱلۡفِئَتَانِ نَكَصَ عَلَىٰ عَقِبَيۡهِ وَقَالَ إِنِّي بَرِيٓءٞ مِّنكُمۡ إِنِّيٓ أَرَىٰ مَا لَا تَرَوۡنَ إِنِّيٓ أَخَافُ ٱللَّهَۚ وَٱللَّهُ شَدِيدُ ٱلۡعِقَابِ ٤٨

49. "ಇವರನ್ನು ಇವರ ಧರ್ಮವು ಮೋಸಗೊಳಿಸಿದೆ" ಎಂದು ಕಪಟವಿಶ್ವಾಸಿಗಳು ಮತ್ತು ಹೃದಯದಲ್ಲಿ ರೋಗವಿರುವವರು ಹೇಳುತ್ತಿದ್ದ ಸಂದರ್ಭ. ಯಾರು ಅಲ್ಲಾಹನಲ್ಲಿ ಭರವಸೆಯಿ-ಡುತ್ತಾರೋ (ಅವರಿಗೆ ಅಲ್ಲಾಹು ಸಾಕು). ನಿಶ್ಚಯವಾಗಿಯೂ ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

إِذۡ يَقُولُ ٱلۡمُنَٰفِقُونَ وَٱلَّذِينَ فِي قُلُوبِهِم مَّرَضٌ غَرَّ هَٰٓؤُلَآءِ دِينُهُمۡۗ وَمَن يَتَوَكَّلۡ عَلَى ٱللَّهِ فَإِنَّ ٱللَّهَ عَزِيزٌ حَكِيمٞ ٤٩

50. ದೇವದೂತರುಗಳು ಸತ್ಯನಿಷೇಧಿಗಳ ಆತ್ಮಗಳನ್ನು ವಶಪಡಿಸುವ ಸಂದರ್ಭವನ್ನು ನೀವು ನೋಡಿರುತ್ತಿದ್ದರೆ! ಅವರು ಅವರ ಮುಖಗಳಿಗೆ ಮತ್ತು ಬೆನ್ನುಗಳಿಗೆ ಥಳಿಸುತ್ತಾ (ಹೇಳುತ್ತಾರೆ): "ಜ್ವಲಿಸುವ ಅಗ್ನಿಯ ಶಿಕ್ಷೆಯ ರುಚಿಯನ್ನು ನೋಡಿ.

وَلَوۡ تَرَىٰٓ إِذۡ يَتَوَفَّى ٱلَّذِينَ كَفَرُواْ ٱلۡمَلَٰٓئِكَةُ يَضۡرِبُونَ وُجُوهَهُمۡ وَأَدۡبَٰرَهُمۡ وَذُوقُواْ عَذَابَ ٱلۡحَرِيقِ ٥٠

51. ನಿಮ್ಮ ಕೈಗಳು ಮುಂದಕ್ಕೆ ಕಳುಹಿಸಿದ (ದುಷ್ಕರ್ಮಗಳೇ) ಇದಕ್ಕೆ ಕಾರಣ. ನಿಶ್ಚಯವಾಗಿಯೂ ಅಲ್ಲಾಹು ದಾಸರೊಡನೆ ಸ್ವಲ್ಪವೂ ಅನ್ಯಾಯ ಮಾಡುವುದಿಲ್ಲ."

ذَٰلِكَ بِمَا قَدَّمَتۡ أَيۡدِيكُمۡ وَأَنَّ ٱللَّهَ لَيۡسَ بِظَلَّٰمٖ لِّلۡعَبِيدِ ٥١

52. ಫರೋಹನ ಜನರು ಮತ್ತು ಅವರಿಗಿಂತ ಮೊದಲಿನವರ ಸ್ಥಿತಿಯಂತೆ. ಅವರು ಅಲ್ಲಾಹನ ವಚನಗಳನ್ನು ನಿಷೇಧಿಸಿದರು. ಆಗ ಅಲ್ಲಾಹು ಅವರನ್ನು ಅವರ ಪಾಪಗಳಿಗಾಗಿ ಹಿಡಿದನು. ನಿಶ್ಚಯವಾಗಿಯೂ ಅಲ್ಲಾಹು ಮಹಾ ಶಕ್ತಿಶಾಲಿ ಮತ್ತು ಕಠಿಣವಾಗಿ ಶಿಕ್ಷಿಸುವವನಾಗಿದ್ದಾನೆ.

كَدَأۡبِ ءَالِ فِرۡعَوۡنَ وَٱلَّذِينَ مِن قَبۡلِهِمۡۚ كَفَرُواْ بِـَٔايَٰتِ ٱللَّهِ فَأَخَذَهُمُ ٱللَّهُ بِذُنُوبِهِمۡۚ إِنَّ ٱللَّهَ قَوِيّٞ شَدِيدُ ٱلۡعِقَابِ ٥٢

53. ಅದೇಕೆಂದರೆ, ಅಲ್ಲಾಹು ಯಾವುದೇ ಒಂದು ಜನತೆಗೆ ನೀಡಿದ ಅನುಗ್ರಹವನ್ನು, ಅವರು ಸ್ವಯಂ ಅವರಲ್ಲಿ ಬದಲಾವಣೆ ತರುವವರೆಗೆ ಬದಲಾಯಿಸುವುದಿಲ್ಲ ಎಂಬುದರಿಂದಾಗಿದೆ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

ذَٰلِكَ بِأَنَّ ٱللَّهَ لَمۡ يَكُ مُغَيِّرٗا نِّعۡمَةً أَنۡعَمَهَا عَلَىٰ قَوۡمٍ حَتَّىٰ يُغَيِّرُواْ مَا بِأَنفُسِهِمۡ وَأَنَّ ٱللَّهَ سَمِيعٌ عَلِيمٞ ٥٣

54. ಫಿರೋಹನ ಜನರು ಮತ್ತು ಅವರಿಗಿಂತ ಮೊದಲಿನವರ ಸ್ಥಿತಿಯಂತೆ. ಅವರು ಅವರ ಪರಿಪಾಲಕನ (ಅಲ್ಲಾಹನ) ವಚನಗಳನ್ನು ನಿಷೇಧಿಸಿದರು. ಆಗ ಅವರ ಪಾಪಗಳಿಗಾಗಿ ನಾವು ಅವರನ್ನು ನಾಶ ಮಾಡಿದೆವು. ಫಿರೋಹನ ಜನರನ್ನು ನಾವು ಮುಳುಗಿಸಿ ಕೊಂದೆವು. ಅವರೆಲ್ಲರೂ ಅಕ್ರಮಿಗಳಾಗಿದ್ದರು.

كَدَأۡبِ ءَالِ فِرۡعَوۡنَ وَٱلَّذِينَ مِن قَبۡلِهِمۡۚ كَذَّبُواْ بِـَٔايَٰتِ رَبِّهِمۡ فَأَهۡلَكۡنَٰهُم بِذُنُوبِهِمۡ وَأَغۡرَقۡنَآ ءَالَ فِرۡعَوۡنَۚ وَكُلّٞ كَانُواْ ظَٰلِمِينَ ٥٤

55. ನಿಶ್ಚಯವಾಗಿಯೂ ಅಲ್ಲಾಹನ ದೃಷ್ಟಿಯಲ್ಲಿ ಸತ್ಯನಿಷೇಧಿಗಳು ಜೀವಿಗಳಲ್ಲೇ ಅತ್ಯಂತ ಕೀಳಾಗಿದ್ದಾರೆ. ಅವರು ವಿಶ್ವಾಸವಿಡುವುದಿಲ್ಲ.

إِنَّ شَرَّ ٱلدَّوَآبِّ عِندَ ٱللَّهِ ٱلَّذِينَ كَفَرُواْ فَهُمۡ لَا يُؤۡمِنُونَ ٥٥

56. ನಿಮ್ಮೊಡನೆ ಕರಾರು ಮಾಡಿಕೊಂಡವರು ಅವರಲ್ಲಿದ್ದಾರೆ. ಆದರೆ ಪ್ರತಿ ಬಾರಿಯೂ ಅವರು ತಮ್ಮ ಕರಾರನ್ನು ಉಲ್ಲಂಘಿಸುತ್ತಾರೆ. ಅವರು ಅಲ್ಲಾಹನನ್ನು ಭಯಪಡುವುದೇ ಇಲ್ಲ.

ٱلَّذِينَ عَٰهَدتَّ مِنۡهُمۡ ثُمَّ يَنقُضُونَ عَهۡدَهُمۡ فِي كُلِّ مَرَّةٖ وَهُمۡ لَا يَتَّقُونَ ٥٦

57. ನೀವು ಯುದ್ಧದಲ್ಲಿ ಅವರಿಗೆ ಮುಖಾಮುಖಿಯಾದರೆ, ಅವರ ಹಿಂದೆ ಇರುವವರೂ ಭಯದಿಂದ ನಡುಗುವಂತೆ ಅವರನ್ನು ಸದೆಬಡಿಯಿರಿ. ಅವರು ಅದನ್ನು ನೆನಪಿಡುವುದಕ್ಕಾಗಿ.

فَإِمَّا تَثۡقَفَنَّهُمۡ فِي ٱلۡحَرۡبِ فَشَرِّدۡ بِهِم مَّنۡ خَلۡفَهُمۡ لَعَلَّهُمۡ يَذَّكَّرُونَ ٥٧

58. ನೀವು ಯಾವುದೇ ಜನತೆಯಿಂದ ವಿಶ್ವಾಸದ್ರೋಹವನ್ನು ಭಯಪಡುವುದಾದರೆ, (ಎರಡು ಪಕ್ಷಗಳೂ ಕರಾರಿಲ್ಲದೆ) ಸಮಾನರಾಗಲು ಅವರ ಕರಾರನ್ನು ಅವರಿಗೆ ಎಸೆದು ಬಿಡಿ.[1] ನಿಶ್ಚಯವಾಗಿಯೂ ಅಲ್ಲಾಹು ವಿಶ್ವಾಸದ್ರೋಹ ಮಾಡುವವರನ್ನು ಇಷ್ಟಪಡುವುದಿಲ್ಲ.

وَإِمَّا تَخَافَنَّ مِن قَوۡمٍ خِيَانَةٗ فَٱنۢبِذۡ إِلَيۡهِمۡ عَلَىٰ سَوَآءٍۚ إِنَّ ٱللَّهَ لَا يُحِبُّ ٱلۡخَآئِنِينَ ٥٨

59. ನಾವು ತಪ್ಪಿಸಿಕೊಂಡಿದ್ದೇವೆಂದು ಸತ್ಯನಿಷೇಧಿಗಳು ಭಾವಿಸದಿರಲಿ. ನಿಶ್ಚಯವಾಗಿಯೂ ಅವರು ಸೋಲಿಸಲಾರರು.

وَلَا يَحۡسَبَنَّ ٱلَّذِينَ كَفَرُواْ سَبَقُوٓاْۚ إِنَّهُمۡ لَا يُعۡجِزُونَ ٥٩

60. ಅವರನ್ನು ಎದುರಿಸಲು ನಿಮಗೆ ಸಾಧ್ಯವಾಗುವ ಎಲ್ಲ ಶಕ್ತಿಯನ್ನು ಮತ್ತು ಅಶ್ವಸೇನೆಯನ್ನು ಸಿದ್ಧಗೊಳಿಸಿ. ಅದರಿಂದ ನೀವು ಅಲ್ಲಾಹನ ಶತ್ರುವನ್ನು ಮತ್ತು ನಿಮ್ಮ ಶತ್ರುವನ್ನು ಹಾಗೂ ಅವರ ಹೊರತಾದ—ನೀವು ತಿಳಿದಿರದ, ಆದರೆ ಅಲ್ಲಾಹು ತಿಳಿದಿರುವ—ಇತರರನ್ನು ಭಯಪಡಿಸಬಹುದು. ನೀವು ಅಲ್ಲಾಹನ ಮಾರ್ಗದಲ್ಲಿ ಏನು ಖರ್ಚು ಮಾಡಿದರೂ ಅದರ ಪೂರ್ಣ ಪ್ರತಿಫಲವನ್ನು ನಿಮಗೆ ನೀಡಲಾಗುವುದು. ನಿಮಗೆ ಯಾವುದೇ

وَأَعِدُّواْ لَهُم مَّا ٱسۡتَطَعۡتُم مِّن قُوَّةٖ وَمِن رِّبَاطِ ٱلۡخَيۡلِ تُرۡهِبُونَ بِهِۦ عَدُوَّ ٱللَّهِ وَعَدُوَّكُمۡ وَءَاخَرِينَ مِن دُونِهِمۡ لَا تَعۡلَمُونَهُمُ ٱللَّهُ يَعۡلَمُهُمۡۚ وَمَا تُنفِقُواْ مِن شَيۡءٖ فِي سَبِيلِ ٱللَّهِ يُوَفَّ إِلَيۡكُمۡ وَأَنتُمۡ لَا تُظۡلَمُونَ ٦٠

[1] ಕರಾರಿನಲ್ಲಿರುವ ಶತ್ರು ಪಕ್ಷದವರು ರಹಸ್ಯವಾಗಿ ಮುಸಲ್ಮಾನರ ಮೇಲೆ ದಾಳಿ ಮಾಡುವ ಸೂಚನೆಯೇನಾದರೂ ಸಿಕ್ಕಿದರೆ ಮುಸಲ್ಮಾನರು, "ನೀವು ಕರಾರನ್ನು ಪಾಲಿಸುವುದಿಲ್ಲವಾದರೆ ನಾವು ಕೂಡ ಪಾಲಿಸುವುದಿಲ್ಲ. ಇನ್ನು ಮುಂದೆ ನಮ್ಮ ಮತ್ತು ನಿಮ್ಮ ನಡುವೆ ಯಾವುದೇ ಕರಾರಿಲ್ಲ" ಎಂದು ಅವರಿಗೆ ಸ್ಪಷ್ಟವಾಗಿ ತಿಳಿಸಬೇಕು.

ಅನ್ಯಾಯವಾಗುವುದಿಲ್ಲ.

61. ಆದರೆ ಅವರು (ಯುದ್ಧವನ್ನು ತೊರೆದು) ಶಾಂತಿಯ ಕಡೆಗೆ ಒಲವು ತೋರಿದರೆ ನೀವು ಕೂಡ ಅದರ ಕಡೆಗೆ ಒಲವು ತೋರಿರಿ ಮತ್ತು ಅಲ್ಲಾಹನಲ್ಲಿ ಭರವಸೆಯಿಡಿ. ನಿಶ್ಚಯವಾಗಿಯೂ ಅವನು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

وَإِن جَنَحُوا۟ لِلسَّلْمِ فَٱجْنَحْ لَهَا وَتَوَكَّلْ عَلَى
ٱللَّهِ ۚ إِنَّهُۥ هُوَ ٱلسَّمِيعُ ٱلْعَلِيمُ ﴿٦١﴾

62. ಅವರು ನಿಮಗೆ ದ್ರೋಹ ಬಗೆಯಲು ಬಯಸಿದರೆ, ನಿಶ್ಚಯವಾಗಿಯೂ ನಿಮಗೆ ಅಲ್ಲಾಹು ಸಾಕು. ತನ್ನ ಸಹಾಯದಿಂದ ಮತ್ತು ಸತ್ಯವಿಶ್ವಾಸಿಗಳ ಮೂಲಕ ನಿಮಗೆ ಶಕ್ತಿ ನೀಡಿದ್ದು ಅವನೇ.

وَإِن يُرِيدُوٓا۟ أَن يَخْدَعُوكَ فَإِنَّ حَسْبَكَ ٱللَّهُ ۚ هُوَ
ٱلَّذِىٓ أَيَّدَكَ بِنَصْرِهِۦ وَبِٱلْمُؤْمِنِينَ ﴿٦٢﴾

63. ಅವನು ಅವರ (ಸತ್ಯವಿಶ್ವಾಸಿಗಳ) ಹೃದಯಗಳನ್ನು ಬೆಸೆದನು. ಭೂಮಿಯಲ್ಲಿರುವ ಎಲ್ಲಾ ವಸ್ತುಗಳನ್ನು ಖರ್ಚು ಮಾಡಿದರೂ ಸಹ ನಿಮಗೆ ಅವರ ಹೃದಯಗಳನ್ನು ಬೆಸೆಯಲು ಸಾಧ್ಯವಾ-ಗುತ್ತಿರಲಿಲ್ಲ. ಆದರೆ ಅಲ್ಲಾಹು ಅವರನ್ನು ಒಂದುಗೂಡಿಸಿದನು. ನಿಶ್ಚಯವಾಗಿಯೂ ಅವನು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَأَلَّفَ بَيْنَ قُلُوبِهِمْ ۚ لَوْ أَنفَقْتَ مَا فِى ٱلْأَرْضِ
جَمِيعًا مَّآ أَلَّفْتَ بَيْنَ قُلُوبِهِمْ وَلَٰكِنَّ ٱللَّهَ
أَلَّفَ بَيْنَهُمْ ۚ إِنَّهُۥ عَزِيزٌ حَكِيمٌ ﴿٦٣﴾

64. ಓ ಪ್ರವಾದಿಯವರೇ! ನಿಮಗೆ ಮತ್ತು ನಿಮ್ಮನ್ನು ಹಿಂಬಾಲಿಸಿದ ಸತ್ಯವಿಶ್ವಾಸಿಗಳಿಗೆ ಅಲ್ಲಾಹು ಸಾಕು.

يَٰٓأَيُّهَا ٱلنَّبِىُّ حَسْبُكَ ٱللَّهُ وَمَنِ ٱتَّبَعَكَ مِنَ
ٱلْمُؤْمِنِينَ ﴿٦٤﴾

65. ಓ ಪ್ರವಾದಿಯವರೇ! ಸತ್ಯವಿಶ್ವಾಸಿಗಳನ್ನು ಯುದ್ಧ ಮಾಡಲು ಉತ್ತೇಜಿಸಿರಿ. ನಿಮ್ಮಲ್ಲಿ ಇಪ್ಪತ್ತು ಸ್ಥೈರ್ಯವಂತರಿದ್ದರೆ ಅವರು ಇನ್ನೂರು ವೈರಿಗಳನ್ನು ಸದೆಬಡಿಯುವರು. ನಿಮ್ಮಲ್ಲಿ ನೂರು ಮಂದಿಯಿದ್ದರೆ ಅವರು ಸಾವಿರ ಸತ್ಯನಿಷೇಧಿಗಳನ್ನು ಸದೆಬಡಿಯುವರು. ಅದೇಕೆಂದರೆ ಅವರು (ಸತ್ಯನಿಷೇಧಿಗಳು) ಅರ್ಥಮಾಡಿಕೊಳ್ಳದ ಜನರಾಗಿದ್ದಾರೆ.

يَٰٓأَيُّهَا ٱلنَّبِىُّ حَرِّضِ ٱلْمُؤْمِنِينَ عَلَى ٱلْقِتَالِ ۚ
إِن يَكُن مِّنكُمْ عِشْرُونَ صَٰبِرُونَ يَغْلِبُوا۟
مِا۟ئَتَيْنِ ۚ وَإِن يَكُن مِّنكُم مِّا۟ئَةٌ يَغْلِبُوٓا۟ أَلْفًا
مِّنَ ٱلَّذِينَ كَفَرُوا۟ بِأَنَّهُمْ قَوْمٌ لَّا يَفْقَهُونَ ﴿٦٥﴾

66. ಈಗ ಅಲ್ಲಾಹು ನಿಮಗೆ ರಿಯಾಯಿತಿ ನೀಡಿದ್ದಾನೆ ಮತ್ತು ನಿಮ್ಮಲ್ಲಿ ಬಲಹೀನತೆಯಿದೆಯೆಂದು ತಿಳಿದಿದ್ದಾನೆ. ಆದ್ದರಿಂದ, ನಿಮ್ಮಲ್ಲಿ ನೂರು ಸ್ಥೈರ್ಯವಂತರಿದ್ದರೆ ಅವರು ಇನ್ನೂರು ಮಂದಿಯನ್ನು ಸದೆಬಡಿಯುವರು ಮತ್ತು ನಿಮ್ಮಲ್ಲಿ ಸಾವಿರ ಮಂದಿಯಿದ್ದರೆ ಅವರು ಅಲ್ಲಾಹನ ಅಪ್ಪಣೆಯಿಂದ ಎರಡು ಸಾವಿರ ವೈರಿಗಳನ್ನು ಸದೆಬಡಿಯುವರು. ಅಲ್ಲಾಹು ಸ್ಥೈರ್ಯವಂತರ ಜೊತೆಗಿದ್ದಾನೆ.

ٱلْـَٰٔنَ خَفَّفَ ٱللَّهُ عَنكُمْ وَعَلِمَ أَنَّ فِيكُمْ
ضَعْفًا ۚ فَإِن يَكُن مِّنكُم مِّا۟ئَةٌ صَابِرَةٌ يَغْلِبُوا۟
مِا۟ئَتَيْنِ ۚ وَإِن يَكُن مِّنكُمْ أَلْفٌ يَغْلِبُوٓا۟
أَلْفَيْنِ بِإِذْنِ ٱللَّهِ ۗ وَٱللَّهُ مَعَ ٱلصَّٰبِرِينَ ﴿٦٦﴾

67. (ಶತ್ರುಗಳನ್ನು ಸದೆಬಡಿದು) ನಾಡಿನಲ್ಲಿ ಪ್ರಾಬಲ್ಯ ಪಡೆಯುವ ತನಕ

مَا كَانَ لِنَبِىٍّ أَن يَكُونَ لَهُۥٓ أَسْرَىٰ حَتَّىٰ

ಪ್ರವಾದಿಯ ಕೈಯಲ್ಲಿ ಯುದ್ಧ ಖೈದಿಗಳಿರುವುದು ಸರಿಯಲ್ಲ.[1] ನೀವು ಇಹಲೋಕದ ಐಶ್ವರ್ಯವನ್ನು ಬಯಸುತ್ತೀರಿ. ಆದರೆ ಅಲ್ಲಾಹು ಪರಲೋಕವನ್ನು ಬಯಸುತ್ತಾನೆ. ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

يُثۡخِنَ فِي ٱلۡأَرۡضِۚ تُرِيدُونَ عَرَضَ ٱلدُّنۡيَا وَٱللَّهُ
يُرِيدُ ٱلۡأٓخِرَةَۗ وَٱللَّهُ عَزِيزٌ حَكِيمٞ ٦٧

---

68. ಅಲ್ಲಾಹನ ಕಡೆಯ ಒಂದು ಪೂರ್ವ ಲಿಖಿತ ನಿರ್ಧಾರವಿಲ್ಲದಿರುತ್ತಿದ್ದರೆ, ನೀವೇನು ಪಡೆದಿರೋ ಅದಕ್ಕಾಗಿ ನಿಮಗೆ ಘೋರ ಶಿಕ್ಷೆ ನೀಡಲಾಗುತ್ತಿತ್ತು.

لَّوۡلَا كِتَٰبٞ مِّنَ ٱللَّهِ سَبَقَ لَمَسَّكُمۡ فِيمَآ
أَخَذۡتُمۡ عَذَابٌ عَظِيمٞ ٦٨

---

69. ಆದ್ದರಿಂದ (ಯುದ್ಧದಲ್ಲಿ) ನೀವು ಗಳಿಸಿದ ಧರ್ಮಸಮ್ಮತ ಮತ್ತು ಶುದ್ಧ ಸಂಪತ್ತನ್ನು ತಿನ್ನಿರಿ. ಅಲ್ಲಾಹನನ್ನು ಭಯಪಡಿರಿ. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ಕರುಣೆ ತೋರುವವನಾಗಿದ್ದಾನೆ.

فَكُلُواْ مِمَّا غَنِمۡتُمۡ حَلَٰلٗا طَيِّبٗاۚ وَٱتَّقُواْ ٱللَّهَۚ إِنَّ
ٱللَّهَ غَفُورٞ رَّحِيمٞ ٦٩

---

70. ಓ ಪ್ರವಾದಿಯವರೇ! ನಿಮ್ಮ ವಶದಲ್ಲಿರುವ ಯುದ್ಧ ಖೈದಿಗಳೊಡನೆ ಹೇಳಿರಿ: "ನಿಮ್ಮ ಹೃದಯಗಳಲ್ಲಿ ಒಳಿತಿದೆಯೆಂದು ಅಲ್ಲಾಹನಿಗೆ ತಿಳಿದರೆ ನಿಮ್ಮಿಂದ ಪಡೆಯಲಾದ (ಪರಿಹಾರಕ್ಕೆ ಬದಲಿಯಾಗಿ) ಅವನು ನಿಮಗೆ ಅತ್ಯುತ್ತಮವಾದುದನ್ನು ನೀಡುವನು[2] ಮತ್ತು ನಿಮ್ಮನ್ನು ಕ್ಷಮಿಸುವನು. ಅಲ್ಲಾಹು ಕ್ಷಮಿಸುವವನು ಮತ್ತು ಕರುಣೆ ತೋರುವವನಾಗಿದ್ದಾನೆ."

يَٰٓأَيُّهَا ٱلنَّبِيُّ قُل لِّمَن فِيٓ أَيۡدِيكُم مِّنَ
ٱلۡأَسۡرَىٰٓ إِن يَعۡلَمِ ٱللَّهُ فِي قُلُوبِكُمۡ خَيۡرٗا
يُؤۡتِكُمۡ خَيۡرٗا مِّمَّآ أُخِذَ مِنكُمۡ وَيَغۡفِرۡ لَكُمۡۚ
وَٱللَّهُ غَفُورٞ رَّحِيمٞ ٧٠

---

71. ಆದರೆ ಅವರು ನಿಮಗೆ ವಿಶ್ವಾಸದ್ರೋಹ ಮಾಡಲು ಬಯಸಿದರೆ—ಇದಕ್ಕಿಂತ ಮೊದಲೂ ಅವರು ಅಲ್ಲಾಹನಿಗೆ ವಿಶ್ವಾಸದ್ರೋಹ ಮಾಡಿದ್ದಾರೆ. ಆದ್ದರಿಂದ ಅವನು ಅವರನ್ನು ನಿಮ್ಮ ವಶಕ್ಕೆ ಒಪ್ಪಿಸಿದನು. ಅಲ್ಲಾಹು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَإِن يُرِيدُواْ خِيَانَتَكَ فَقَدۡ خَانُواْ ٱللَّهَ مِن قَبۡلُ
فَأَمۡكَنَ مِنۡهُمۡۗ وَٱللَّهُ عَلِيمٌ حَكِيمٞ ٧١

---

[1] ಬದ್ರ್ ಯುದ್ಧದಲ್ಲಿ 70 ಶತ್ರುಗಳು ಹತರಾಗಿದ್ದರು ಮತ್ತು 70 ಶತ್ರುಗಳನ್ನು ಸೆರೆಹಿಡಿಯಲಾಗಿತ್ತು. ಇದು ಇಸ್ಲಾಂನಲ್ಲಿ ನಡೆದ ಮೊದಲ ಯುದ್ಧವಾಗಿದ್ದರಿಂದ ಈ ಖೈದಿಗಳನ್ನು ಏನು ಮಾಡಬೇಕೆಂಬ ಬಗ್ಗೆ ಯಾವುದೇ ನಿರ್ಧಾರವಿರಲಿಲ್ಲ. ಆದ್ದರಿಂದ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮುಸಲ್ಮಾನರ ಸಭೆ ಕರೆದು ಸಮಾಲೋಚನೆ ಮಾಡಿದರು. ಕೆಲವರು ಖೈದಿಗಳನ್ನು ಕೊಲ್ಲಬೇಕೆಂದು ಅಭಿಪ್ರಾಯ ಹೇಳಿದರೆ ಕೆಲವರು ಪರಿಹಾರವನ್ನು ಪಡೆದು ಖೈದಿಗಳನ್ನು ಬಿಟ್ಟು ಬಿಡೋಣ ಎಂದರು. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಎರಡನೇ ಅಭಿಪ್ರಾಯವನ್ನು ಆರಿಸಿದರು. ಆಗ ಅಲ್ಲಾಹು ಈ ವಚನವನ್ನು ಅವತೀರ್ಣಗೊಳಿಸಿದನು. ಅಂದರೆ, ಮುಸಲ್ಮಾನರಿಗೆ ನಾಡಿನಲ್ಲಿ ಪ್ರಾಬಲ್ಯ ಸಿಗುವ ತನಕ ಪರಿಹಾರ ಪಡೆದು ಯುದ್ಧ ಖೈದಿಗಳನ್ನು ಬಿಟ್ಟುಬಿಡಬಾರದು. ಏಕೆಂದರೆ ಅದರಿಂದ ಅವರು ತಂತ್ರಗಳನ್ನು ರೂಪಿಸಿ ಇನ್ನೊಂದು ಯುದ್ಧಕ್ಕೆ ತಯಾರಿ ನಡೆಸುವ ಸಾಧ್ಯತೆಯಿರುತ್ತದೆ. ಆದರೆ ಮುಸಲ್ಮಾನರಿಗೆ ನಾಡಿನಲ್ಲಿ ಪ್ರಾಬಲ್ಯವುಂಟಾಗಿ ಅವರನ್ನು ಸೋಲಿಸುವುದು ಅಷ್ಟು ಸುಲಭವಲ್ಲ ಎಂಬ ಸ್ಥಿತಿಯು ಉಂಟಾದರೆ ಯುದ್ಧ ಖೈದಿಗಳ ವಿಷಯದಲ್ಲಿ ಈ ಕೆಳಗಿನ ನಾಲ್ಕು ಆಯ್ಕೆಗಳಲ್ಲಿ ಒಂದನ್ನು ಆರಿಸಬಹುದು: 1. ಅವರನ್ನು ಕೊಲ್ಲುವುದು. 2. ಪರಿಹಾರ ಪಡೆದು ಅವರನ್ನು ಬಿಟ್ಟುಬಿಡುವುದು. 3. ಅವರನ್ನು ಮುಸಲ್ಮಾನ ಖೈದಿಗಳೊಡನೆ ವಿನಿಮಯ ಮಾಡಿಕೊಳ್ಳುವುದು. 4. ಅವರನ್ನು ಗುಲಾಮರನ್ನಾಗಿ ಮಾಡುವುದು.

[2] ಅಂದರೆ ನಿಮ್ಮ ಹೃದಯದಲ್ಲಿ ಇಸ್ಲಾಂ ಧರ್ಮದ ಬಗ್ಗೆ ಒಲವು ಇದ್ದರೆ, ಅಥವಾ ಇಸ್ಲಾಂ ಸ್ವೀಕರಿಸುವ ಇರಾದೆಯಿದ್ದರೆ, ಅಲ್ಲಾಹು ನೀವು ಇಸ್ಲಾಂ ಧರ್ಮವನ್ನು ಸ್ವೀಕರಿಸುವಂತೆ ಮಾಡುವನು. ನಂತರ ನಿಮ್ಮಿಂದ ಪಡೆದ ಪರಿಹಾರ ಧನಕ್ಕೆ ಬದಲಿಯಾಗಿ ನಿಮಗೆ ಐಶ್ವರ್ಯವನ್ನು ನೀಡುವನು.

72. ನಿಶ್ಚಯವಾಗಿಯೂ ಸತ್ಯವಿಶ್ವಾಸವಿಟ್ಟವರು, ವಲಸೆ (ಹಿಜ್ರ) ಮಾಡಿದವರು, ತಮ್ಮ ತನು-ಧನಗಳಿಂದ ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡಿದವರು ಮತ್ತು ಆಶ್ರಯ ನೀಡಿ ಸಹಾಯ ಮಾಡಿದವರು[1] ಯಾರೋ—ನಿಶ್ಚಯವಾಗಿಯೂ ಅವರು ಪರಸ್ಪರ ಆಪ್ತಮಿತ್ರರಾಗಿದ್ದಾರೆ. ಆದರೆ ಸತ್ಯವಿಶ್ವಾಸಿಗಳಾಗಿದ್ದೂ ಸಹ ವಲಸೆ (ಹಿಜ್ರ) ಮಾಡದವರು ಯಾರೋ—ಅವರು ವಲಸೆ (ಹಿಜ್ರ) ಮಾಡುವ ತನಕ—ಅವರೊಡನೆ ನಿಮಗೆ ಯಾವುದೇ ಮೈತ್ರಿಯಿಲ್ಲ.[2] ಆದರೆ ಅವರು ಧರ್ಮದ ವಿಷಯದಲ್ಲಿ ನಿಮ್ಮೊಡನೆ ಸಹಾಯ ಕೇಳಿದರೆ ಅವರಿಗೆ ಸಹಾಯ ಮಾಡುವುದು ನಿಮ್ಮ ಕರ್ತವ್ಯವಾಗಿದೆ. ಆದರೆ ಯಾರೊಡನೆ ನೀವು ಕರಾರಿನಲ್ಲಿದ್ದೀರೋ ಅವರಿಗೆ ವಿರುದ್ಧವಾಗಿ ನೀವು ಅವರಿಗೆ ಸಹಾಯ ಮಾಡಬಾರದು. ಅಲ್ಲಾಹು ನೀವು ಮಾಡುವುದನ್ನು ನೋಡುತ್ತಿದ್ದಾನೆ.

إِنَّ ٱلَّذِينَ ءَامَنُواْ وَهَاجَرُواْ وَجَٰهَدُواْ بِأَمۡوَٰلِهِمۡ وَأَنفُسِهِمۡ فِي سَبِيلِ ٱللَّهِ وَٱلَّذِينَ ءَاوَواْ وَّنَصَرُوٓاْ أُوْلَٰٓئِكَ بَعۡضُهُمۡ أَوۡلِيَآءُ بَعۡضٖۚ وَٱلَّذِينَ ءَامَنُواْ وَلَمۡ يُهَاجِرُواْ مَا لَكُم مِّن وَلَٰيَتِهِم مِّن شَيۡءٍ حَتَّىٰ يُهَاجِرُواْۚ وَإِنِ ٱسۡتَنصَرُوكُمۡ فِي ٱلدِّينِ فَعَلَيۡكُمُ ٱلنَّصۡرُ إِلَّا عَلَىٰ قَوۡمِۭ بَيۡنَكُمۡ وَبَيۡنَهُم مِّيثَٰقٞۗ وَٱللَّهُ بِمَا تَعۡمَلُونَ بَصِيرٞ ٧٢

73. ಸತ್ಯನಿಷೇಧಿಗಳು ಪರಸ್ಪರ ಆಪ್ತಮಿತ್ರರು. ನೀವು ಹೀಗೆ (ಪರಸ್ಪರ ಸಹಾಯ) ಮಾಡದಿದ್ದರೆ ಭೂಮಿಯಲ್ಲಿ ಕ್ಷೋಭೆ ಮತ್ತು ಮಹಾ ಅರಾಜಕತೆ ಉದ್ಭವವಾಗಬಹುದು.

وَٱلَّذِينَ كَفَرُواْ بَعۡضُهُمۡ أَوۡلِيَآءُ بَعۡضٍۚ إِلَّا تَفۡعَلُوهُ تَكُن فِتۡنَةٞ فِي ٱلۡأَرۡضِ وَفَسَادٞ كَبِيرٞ ٧٣

74. ಸತ್ಯವಿಶ್ವಾಸವಿಟ್ಟವರು, ವಲಸೆ (ಹಿಜ್ರ) ಮಾಡಿದವರು, ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡಿದವರು ಮತ್ತು ಆಶ್ರಯ ನೀಡಿ ಸಹಾಯ ಮಾಡಿದವರು ಯಾರೋ ಅವರೇ ನಿಜವಾದ ಸತ್ಯವಿಶ್ವಾಸಿಗಳು. ಅವರಿಗೆ ಕ್ಷಮೆ ಮತ್ತು ಗೌರವಾನ್ವಿತ ಉಪಜೀವನವಿದೆ.

وَٱلَّذِينَ ءَامَنُواْ وَهَاجَرُواْ وَجَٰهَدُواْ فِي سَبِيلِ ٱللَّهِ وَٱلَّذِينَ ءَاوَواْ وَّنَصَرُوٓاْ أُوْلَٰٓئِكَ هُمُ ٱلۡمُؤۡمِنُونَ حَقّٗاۚ لَّهُم مَّغۡفِرَةٞ وَرِزۡقٞ كَرِيمٞ ٧٤

75. ಅದರ ನಂತರ ಸತ್ಯವಿಶ್ವಾಸಿಗಳಾದವರು, ವಲಸೆ (ಹಿಜ್ರ) ಮಾಡಿದವರು ಮತ್ತು ನಿಮ್ಮ ಜೊತೆಗೂಡಿ ಯುದ್ಧ ಮಾಡಿದವರು ಯಾರೋ ಅವರು ಕೂಡ ನಿಮ್ಮವರೇ. ಆದರೆ ಅಲ್ಲಾಹನ ನಿಯಮದ ಪ್ರಕಾರ ರಕ್ತಸಂಬಂಧಿಗಳು ಪರಸ್ಪರ ಹೆಚ್ಚು ಹಕ್ಕುಳ್ಳವರು. ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ವಿಷಯಗಳನ್ನು ತಿಳಿದವನಾಗಿದ್ದಾನೆ.

وَٱلَّذِينَ ءَامَنُواْ مِنۢ بَعۡدُ وَهَاجَرُواْ وَجَٰهَدُواْ مَعَكُمۡ فَأُوْلَٰٓئِكَ مِنكُمۡۚ وَأُوْلُواْ ٱلۡأَرۡحَامِ بَعۡضُهُمۡ أَوۡلَىٰ بِبَعۡضٖ فِي كِتَٰبِ ٱللَّهِۚ إِنَّ ٱللَّهَ بِكُلِّ شَيۡءٍ عَلِيمُۢ ٧٥

---

[1] ತನು-ಧನಗಳಿಂದ ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡಿದವರು ಎಂದರೆ ಮುಹಾಜಿರ್‌ಗಳು. ಇವರು ಶ್ರೇಷ್ಠತೆಯಲ್ಲಿ ಮೊದಲ ಸ್ಥಾನದಲ್ಲಿದ್ದಾರೆ. ಆಶ್ರಯ ನೀಡಿ ಸಹಾಯ ಮಾಡಿದವರು ಎಂದರೆ ಅನ್ಸಾರ್‌ಗಳು. ಇವರು ಶ್ರೇಷ್ಠತೆಯಲ್ಲಿ ಎರಡನೇ ಸ್ಥಾನದಲ್ಲಿದ್ದಾರೆ.

[2] ಇವರು ಇಸ್ಲಾಂ ಧರ್ಮ ಸ್ವೀಕರಿಸಿದ ನಂತರ ಮದೀನಕ್ಕೆ ವಲಸೆ (ಹಿಜ್ರ) ಮಾಡದೆ ತಮ್ಮದೇ ಊರಲ್ಲಿ ವಾಸವಾಗಿದ್ದ ಮುಸಲ್ಮಾನರು. ಇವರ ರಕ್ಷಣೆ ಮಾಡುವ ಯಾವುದೇ ಹೊಣೆಗಾರಿಕೆ ಮದೀನದ ಮುಸಲ್ಮಾನರಿಗಿಲ್ಲ. ಆದರೆ ಅವರು ಸತ್ಯನಿಷೇಧಿಗಳ ವಿರುದ್ಧ ಸಹಾಯ ಕೇಳಿದರೆ ಸಹಾಯ ಮಾಡಬೇಕು. ಆದರೆ ಆ ಸತ್ಯನಿಷೇಧಿಗಳು ಮುಸಲ್ಮಾನರೊಡನೆ ಕರಾರಿನಲ್ಲಿರುವವರಾಗಿದ್ದರೆ ಅವರ ವಿರುದ್ಧ ಅವರಿಗೆ ಸಹಾಯ ಮಾಡಬಾರದು.

# 9. ಅತ್ತೌಬ

1. ಇದು ಬಹುದೇವವಿಶ್ವಾಸಿಗಳಲ್ಲಿ ನೀವು ಯಾರೊಡನೆ ಕರಾರು ಮಾಡಿಕೊಂಡಿದ್ದೀರೋ ಅವರಿಗೆ ಅಲ್ಲಾಹು ಮತ್ತು ಅವನ ಸಂದೇಶವಾಹಕರ ಕಡೆಯ ಹೊಣೆಮುಕ್ತಿಯ ಘೋಷಣೆಯಾಗಿದೆ.[1]

بَرَآءَةٞ مِّنَ ٱللَّهِ وَرَسُولِهِۦٓ إِلَى ٱلَّذِينَ عَٰهَدتُّم مِّنَ ٱلۡمُشۡرِكِينَ ١

2. ಆದ್ದರಿಂದ ನೀವು (ಬಹುದೇವವಿಶ್ವಾಸಿಗಳು) ನಾಲ್ಕು ತಿಂಗಳವರೆಗೆ ಭೂಮಿಯಲ್ಲಿ ಸ್ವಚ್ಛಂದವಾಗಿ ಸಂಚರಿಸಿರಿ.[2] ತಿಳಿಯಿರಿ! ಅಲ್ಲಾಹನನ್ನು ಸೋಲಿಸಲು ನಿಮಗೆ ಸಾಧ್ಯವಿಲ್ಲ. ನಿಶ್ಚಯವಾಗಿಯೂ ಅಲ್ಲಾಹು ಸತ್ಯನಿಷೇಧಿಗಳನ್ನು ಅಪಮಾನಿತ-ರನ್ನಾಗಿ ಮಾಡುವನು.

فَسِيحُواْ فِي ٱلۡأَرۡضِ أَرۡبَعَةَ أَشۡهُرٖ وَٱعۡلَمُوٓاْ أَنَّكُمۡ غَيۡرُ مُعۡجِزِي ٱللَّهِ وَأَنَّ ٱللَّهَ مُخۡزِي ٱلۡكَٰفِرِينَ ٢

3. ಇದು ಜನರಿಗೆ ಮಹಾ ಹಜ್ಜ್‌ನ ದಿನದಂದು ಅಲ್ಲಾಹು ಮತ್ತು ಅವನ ಸಂದೇಶವಾಹಕರ ಕಡೆಯ ಘೋಷಣೆಯಾಗಿದೆ—ಏನೆಂದರೆ ಅಲ್ಲಾಹು ಮತ್ತು ಅವರ ಸಂದೇಶವಾಹಕರು ಬಹುದೇವವಿಶ್ವಾಸಿಗಳಿಂದ ಸಂಪೂರ್ಣ ಮುಕ್ತರಾಗಿದ್ದಾರೆ. ನೀವು (ಬಹುದೇವವಿಶ್ವಾಸಿಗಳು) ಪಶ್ಚಾತ್ತಾಪಪಟ್ಟರೆ ಅದು ನಿಮಗೆ ಒಳಿತಾಗಿದೆ. ನೀವು ಲೆಕ್ಕಿಸದೆ ತಿರುಗಿ ನಡೆದರೆ ತಿಳಿಯಿರಿ! ನಿಶ್ಚಯವಾಗಿಯೂ ಅಲ್ಲಾಹನನ್ನು ಸೋಲಿಸಲು ನಿಮ್ಮಿಂದ ಸಾಧ್ಯವಿಲ್ಲ. ಸತ್ಯನಿಷೇಧಿಗಳಿಗೆ ಯಾತನಾಮಯ ಶಿಕ್ಷೆಯ ಬಗ್ಗೆ ಸುವಾರ್ತೆ ನೀಡಿರಿ.

وَأَذَٰنٞ مِّنَ ٱللَّهِ وَرَسُولِهِۦٓ إِلَى ٱلنَّاسِ يَوۡمَ ٱلۡحَجِّ ٱلۡأَكۡبَرِ أَنَّ ٱللَّهَ بَرِيٓءٞ مِّنَ ٱلۡمُشۡرِكِينَ وَرَسُولُهُۥۚ فَإِن تُبۡتُمۡ فَهُوَ خَيۡرٞ لَّكُمۡۖ وَإِن تَوَلَّيۡتُمۡ فَٱعۡلَمُوٓاْ أَنَّكُمۡ غَيۡرُ مُعۡجِزِي ٱللَّهِۗ وَبَشِّرِ ٱلَّذِينَ كَفَرُواْ بِعَذَابٍ أَلِيمٍ ٣

4. ಆದರೆ ಬಹುದೇವವಿಶ್ವಾಸಿಗಳಲ್ಲಿ ನೀವು ಯಾರೊಡನೆ ಕರಾರು ಮಾಡಿಕೊಂಡಿದ್ದೀರೋ ಅವರು ಕರಾರು ಉಲ್ಲಂ-ಘಿಸದಿದ್ದರೆ ಮತ್ತು ನಿಮಗೆ ವಿರುದ್ಧವಾಗಿ ನಿಮ್ಮ ಶತ್ರುಗಳಿಗೆ ಸಹಾಯ ಮಾಡದಿದ್ದರೆ ಅವರು ಇದರಿಂದ ಹೊರತಾಗಿದ್ದಾರೆ. ನೀವು ಅವರೊಡನೆ ಮಾಡಿದ ಕರಾರನ್ನು ಅವರ ಅವಧಿ ಮುಗಿಯುವವರೆಗೆ ಮುಂದುವರಿಸಿರಿ. ನಿಶ್ಚಯವಾಗಿಯೂ ಅಲ್ಲಾಹು ದೇವಭಯವುಳ್ಳವರನ್ನು ಪ್ರೀತಿಸುತ್ತಾನೆ.

إِلَّا ٱلَّذِينَ عَٰهَدتُّم مِّنَ ٱلۡمُشۡرِكِينَ ثُمَّ لَمۡ يَنقُصُوكُمۡ شَيۡـٔٗا وَلَمۡ يُظَٰهِرُواْ عَلَيۡكُمۡ أَحَدٗا فَأَتِمُّوٓاْ إِلَيۡهِمۡ عَهۡدَهُمۡ إِلَىٰ مُدَّتِهِمۡۚ إِنَّ ٱللَّهَ يُحِبُّ ٱلۡمُتَّقِينَ ٤

---

[1] ಮುಸಲ್ಮಾನರೊಡನೆ ತಾತ್ಕಾಲಿಕವಾಗಿ, ಅಥವಾ 4 ತಿಂಗಳಿಗಿಂತ ಕಡಿಮೆ, ಅಥವಾ 4 ತಿಂಗಳಿಗಿಂತ ಹೆಚ್ಚು ಅವಧಿಯ ತನಕ ಕರಾರು ಮಾಡಿಕೊಂಡಿದ್ದು ತಮ್ಮ ಕರಾರನ್ನು ಪಾಲಿಸದೆ ವಿಶ್ವಾಸದ್ರೋಹವೆಸಗಿದ ಬಹುದೇವವಿಶ್ವಾಸಿಗಳೊಡನೆ ಈ ಹೊಣೆಮುಕ್ತಿಯ ಘೋಷಣೆಯನ್ನು ಮಾಡಲಾಗಿದೆ.

[2] ಅವರಿಗೆ ನಾಲ್ಕು ತಿಂಗಳ ಕಾಲಾವಕಾಶ ನೀಡಲಾಗುತ್ತದೆ. ಈ ಅವಧಿಯಲ್ಲಿ ಅವರ ಮೇಲೆ ಯಾವುದೇ ದಾಳಿ ಮಾಡಲಾಗುವುದಿಲ್ಲ.

| | |
|---|---|
| 5. ಪವಿತ್ರ ತಿಂಗಳುಗಳು ಕಳೆದರೆ,[1] ಆ ಬಹುದೇವವಿಶ್ವಾಸಿಗಳನ್ನು ಕಂಡಲ್ಲಿ ಕೊಲ್ಲಿರಿ. ಅವರನ್ನು ಹಿಡಿಯಿರಿ, ಸುತ್ತುವರಿಯಿರಿ ಮತ್ತು ಎಲ್ಲಾ ಆಯಕಟ್ಟಿನ ಸ್ಥಳಗಳಲ್ಲಿ ಅವರಿಗಾಗಿ ಹೊಂಚುಹಾಕಿರಿ. ಅವರು ಪಶ್ಚಾತ್ತಾಪಪಟ್ಟು ನಮಾಝ್ ಸಂಸ್ಥಾಪಿಸಿದರೆ ಮತ್ತು ಝಕಾತ್ ನೀಡಿದರೆ ಅವರನ್ನು ಅವರ ದಾರಿಯಲ್ಲಿ ಬಿಟ್ಟುಬಿಡಿ. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ. | فَإِذَا ٱنسَلَخَ ٱلۡأَشۡهُرُ ٱلۡحُرُمُ فَٱقۡتُلُواْ ٱلۡمُشۡرِكِينَ حَيۡثُ وَجَدتُّمُوهُمۡ وَخُذُوهُمۡ وَٱحۡصُرُوهُمۡ وَٱقۡعُدُواْ لَهُمۡ كُلَّ مَرۡصَدٖۚ فَإِن تَابُواْ وَأَقَامُواْ ٱلصَّلَوٰةَ وَءَاتَوُاْ ٱلزَّكَوٰةَ فَخَلُّواْ سَبِيلَهُمۡۚ إِنَّ ٱللَّهَ غَفُورٞ رَّحِيمٞ ٥ |
| 6. ಬಹುದೇವವಿಶ್ವಾಸಿಗಳಲ್ಲಿ ಯಾರಾದರೂ ನಿಮ್ಮೊಡನೆ ಆಶ್ರಯ ಬೇಡಿದರೆ, ಅವನಿಗೆ ಆಶ್ರಯ ನೀಡಿರಿ—ಅವನು ಅಲ್ಲಾಹನ ವಚನಗಳನ್ನು ಕೇಳುವ ತನಕ. ನಂತರ ಅವನನ್ನು ಅವನ ಸುರಕ್ಷಿತ ಸ್ಥಳಕ್ಕೆ ತಲುಪಿಸಿರಿ. ಅದೇಕೆಂದರೆ ಅವರು ತಿಳುವಳಿಕೆಯಿಲ್ಲದ ಜನರಾಗಿದ್ದಾರೆ. | وَإِنۡ أَحَدٞ مِّنَ ٱلۡمُشۡرِكِينَ ٱسۡتَجَارَكَ فَأَجِرۡهُ حَتَّىٰ يَسۡمَعَ كَلَٰمَ ٱللَّهِ ثُمَّ أَبۡلِغۡهُ مَأۡمَنَهُۥۚ ذَٰلِكَ بِأَنَّهُمۡ قَوۡمٞ لَّا يَعۡلَمُونَ ٦ |
| 7. ಬಹುದೇವವಿಶ್ವಾಸಿಗಳಿಗೆ ಅಲ್ಲಾಹು ಮತ್ತು ಅವನ ಸಂದೇಶವಾಹಕರೊಡನೆ ಕರಾರು ಇರುವುದು ಹೇಗೆ? ಪವಿತ್ರ ಮಸೀದಿಯ ಬಳಿ ನೀವು ಕರಾರು ಮಾಡಿಕೊಂಡವರ ಹೊರತು. ಅವರು ತಮ್ಮ ಕರಾರಿನಲ್ಲಿ ನೇರವಾಗಿ ನಿಲ್ಲುವ ತನಕ ನೀವು ನಿಮ್ಮ ಕರಾರಿನಲ್ಲಿ ನೇರವಾಗಿ ನಿಲ್ಲಿರಿ. ನಿಶ್ಚಯವಾಗಿಯೂ ಅಲ್ಲಾಹು ದೇವಭಯವುಳ್ಳವರನ್ನು ಪ್ರೀತಿಸುತ್ತಾನೆ. | كَيۡفَ يَكُونُ لِلۡمُشۡرِكِينَ عَهۡدٌ عِندَ ٱللَّهِ وَعِندَ رَسُولِهِۦٓ إِلَّا ٱلَّذِينَ عَٰهَدتُّمۡ عِندَ ٱلۡمَسۡجِدِ ٱلۡحَرَامِۖ فَمَا ٱسۡتَقَٰمُواْ لَكُمۡ فَٱسۡتَقِيمُواْ لَهُمۡۚ إِنَّ ٱللَّهَ يُحِبُّ ٱلۡمُتَّقِينَ ٧ |
| 8. ಅವರಿಗೆ ಕರಾರು ಇರುವುದು ಹೇಗೆ? ಅವರಿಗೆ ನಿಮ್ಮ ಮೇಲೆ ಪ್ರಾಬಲ್ಯ ದೊರೆತರೆ, ನಿಮ್ಮ ವಿಷಯದಲ್ಲಿ ಅವರು ಕುಟುಂಬ ಸಂಬಂಧವನ್ನು ಅಥವಾ ಕರಾರನ್ನು ಪರಿಗಣಿಸುವುದಿಲ್ಲ. ಅವರು ಮಾತಿನ ಮೂಲಕ ನಿಮ್ಮ ಬಗ್ಗೆ ಸಂತೃಪ್ತಿ ಸೂಚಿಸುತ್ತಾರೆ. ಆದರೆ ಅವರ ಹೃದಯಗಳು ಅದನ್ನು ಒಪ್ಪಿಕೊಳ್ಳುವುದಿಲ್ಲ. ಅವರಲ್ಲಿ ಹೆಚ್ಚಿನವರೂ ದುಷ್ಕರ್ಮಿಗಳಾಗಿದ್ದಾರೆ. | كَيۡفَ وَإِن يَظۡهَرُواْ عَلَيۡكُمۡ لَا يَرۡقُبُواْ فِيكُمۡ إِلّٗا وَلَا ذِمَّةٗۚ يُرۡضُونَكُم بِأَفۡوَٰهِهِمۡ وَتَأۡبَىٰ قُلُوبُهُمۡ وَأَكۡثَرُهُمۡ فَٰسِقُونَ ٨ |
| 9. ಅವರು ಅಲ್ಲಾಹನ ವಚನಗಳನ್ನು ಅಲ್ಪ ಬೆಲೆಗೆ ಮಾರಿದರು ಮತ್ತು ಅವನ ಮಾರ್ಗದಿಂದ ಜನರನ್ನು ತಡೆದರು. ನಿಶ್ಚಯವಾಗಿಯೂ ಅವರು ಮಾಡುವ ಕರ್ಮಗಳು ಬಹಳ ನೀಚವಾಗಿವೆ. | ٱشۡتَرَوۡاْ بِـَٔايَٰتِ ٱللَّهِ ثَمَنٗا قَلِيلٗا فَصَدُّواْ عَن سَبِيلِهِۦٓۚ إِنَّهُمۡ سَآءَ مَا كَانُواْ يَعۡمَلُونَ ٩ |
| 10. ಅವರು ಸತ್ಯವಿಶ್ವಾಸಿಯ ವಿಷಯದಲ್ಲಿ ಕುಟುಂಬ ಸಂಬಂಧವನ್ನು ಅಥವಾ ಕರಾರನ್ನು ಪರಿಗಣಿಸುವುದಿಲ್ಲ. ಅವರೇ ಅತಿರೇಕಿಗಳು. | لَا يَرۡقُبُونَ فِي مُؤۡمِنٍ إِلّٗا وَلَا ذِمَّةٗۚ وَأُوْلَٰٓئِكَ هُمُ ٱلۡمُعۡتَدُونَ ١٠ |

[1] ಅಂದರೆ ಮೇಲೆ ಸೂಚಿಸಲಾದ ನಾಲ್ಕು ತಿಂಗಳುಗಳು.

11. ಆದರೆ ಅವರು ಪಶ್ಚಾತ್ತಾಪಪಟ್ಟು, ನಮಾಝನ್ನು ಸಂಸ್ಥಾಪಿಸಿದರೆ ಮತ್ತು ಝಕಾತ್ ನೀಡಿದರೆ, ಅವರು ನಿಮ್ಮ ಧಾರ್ಮಿಕ ಸಹೋದರರಾಗಿದ್ದಾರೆ. ತಿಳುವಳಿಕೆಯಿರುವ ಜನರಿಗಾಗಿ ನಾವು ವಚನಗಳನ್ನು ವಿವರಿಸಿಕೊಡುತ್ತೇವೆ.

فَإِن تَابُواْ وَأَقَامُواْ ٱلصَّلَوٰةَ وَءَاتَوُاْ ٱلزَّكَوٰةَ فَإِخْوَٰنُكُمْ فِى ٱلدِّينِ ۗ وَنُفَصِّلُ ٱلْـَٔايَٰتِ لِقَوْمٍ يَعْلَمُونَ ﴿١١﴾

12. ಅವರು ಕರಾರು ಮಾಡಿದ ನಂತರ ತಮ್ಮ ಪ್ರತಿಜ್ಞೆ-ಗಳನ್ನು ಉಲ್ಲಂಘಿಸಿದರೆ ಮತ್ತು ನಿಮ್ಮ ಧರ್ಮವನ್ನು ಅವಹೇಳನ ಮಾಡಿದರೆ, ಆ ಸತ್ಯನಿಷೇಧದ ಮುಖಂಡರ ವಿರುದ್ಧ ಯುದ್ಧ ಮಾಡಿರಿ. ನಿಶ್ಚಯವಾಗಿಯೂ ಅವರ ಪ್ರತಿಜ್ಞೆಗಳಿಗೆ ಯಾವುದೇ ಬೆಲೆಯಿಲ್ಲ. ಅವರು (ವೈರವನ್ನು) ಮುಕ್ತಾಯಗೊಳಿಸಲೂಬಹುದು.

وَإِن نَّكَثُوٓاْ أَيْمَٰنَهُم مِّنۢ بَعْدِ عَهْدِهِمْ وَطَعَنُواْ فِى دِينِكُمْ فَقَٰتِلُوٓاْ أَئِمَّةَ ٱلْكُفْرِ ۙ إِنَّهُمْ لَآ أَيْمَٰنَ لَهُمْ لَعَلَّهُمْ يَنتَهُونَ ﴿١٢﴾

13. ತಮ್ಮ ಪ್ರತಿಜ್ಞೆಗಳನ್ನು ಉಲ್ಲಂಘಿಸಿದ ಮತ್ತು ಸಂದೇಶವಾಹ-ಕರನ್ನು ಹೊರದಬ್ಬಲು ಯತ್ನಿಸಿದ ಜನರ ವಿರುದ್ಧ ನೀವೇಕೆ ಯುದ್ಧ ಮಾಡುವುದಿಲ್ಲ? ಮೊದಲು ಯುದ್ಧ ಆರಂಭಿಸಿದವರು ಅವರೇ. ನೀವು ಅವರಿಗೆ ಹೆದರುತ್ತೀರಾ? ನೀವು ಹೆದರಲು ಹೆಚ್ಚು ಅರ್ಹನಾಗಿರುವುದು ಅಲ್ಲಾಹನಾಗಿದ್ದಾನೆ. ನೀವು ಸತ್ಯವಿಶ್ವಾಸಿಗಳಾಗಿದ್ದರೆ.

أَلَا تُقَٰتِلُونَ قَوْمًا نَّكَثُوٓاْ أَيْمَٰنَهُمْ وَهَمُّواْ بِإِخْرَاجِ ٱلرَّسُولِ وَهُم بَدَءُوكُمْ أَوَّلَ مَرَّةٍ ۚ أَتَخْشَوْنَهُمْ ۚ فَٱللَّهُ أَحَقُّ أَن تَخْشَوْهُ إِن كُنتُم مُّؤْمِنِينَ ﴿١٣﴾

14. ಅವರ ವಿರುದ್ಧ ಯುದ್ಧ ಮಾಡಿರಿ. ನಿಮ್ಮ ಕೈಗಳ ಮೂಲಕ ಅಲ್ಲಾಹು ಅವರನ್ನು ಶಿಕ್ಷಿಸುವನು, ಅವರನ್ನು ಅಪಮಾ-ನಿತರನ್ನಾಗಿ ಮಾಡುವನು, ಅವರಿಗೆ ವಿರುದ್ಧವಾಗಿ ನಿಮಗೆ ಸಹಾಯ ಮಾಡುವನು ಮತ್ತು ಸತ್ಯವಿಶ್ವಾಸಿಗಳ ಹೃದಯಗಳಿಗೆ ಸಂತೃಪ್ತಿಯನ್ನು ನೀಡುವನು.

قَٰتِلُوهُمْ يُعَذِّبْهُمُ ٱللَّهُ بِأَيْدِيكُمْ وَيُخْزِهِمْ وَيَنصُرْكُمْ عَلَيْهِمْ وَيَشْفِ صُدُورَ قَوْمٍ مُّؤْمِنِينَ ﴿١٤﴾

15. ಅವರ ಹೃದಯಗಳಿಂದ ಆಕ್ರೋಶವನ್ನು ನಿವಾರಿಸುವನು. ಅಲ್ಲಾಹು ಅವನು ಇಚ್ಛಿಸುವವರ ಪಶ್ಚಾತ್ತಾಪ-ವನ್ನು ಸ್ವೀಕರಿಸುತ್ತಾನೆ. ಅಲ್ಲಾಹು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَيُذْهِبْ غَيْظَ قُلُوبِهِمْ ۗ وَيَتُوبُ ٱللَّهُ عَلَىٰ مَن يَشَآءُ ۗ وَٱللَّهُ عَلِيمٌ حَكِيمٌ ﴿١٥﴾

16. ನಿಮ್ಮಲ್ಲಿ (ನಿಷ್ಠೆಯಿಂದ) ಯುದ್ಧ ಮಾಡಿದವರು ಯಾರು ಮತ್ತು ಅಲ್ಲಾಹು, ಅವನ ಸಂದೇಶವಾಹಕರು ಹಾಗೂ ಸತ್ಯ-ವಿಶ್ವಾಸಿಗಳನ್ನು ಬಿಟ್ಟು ಇತರರೊಂದಿಗೆ ರಹಸ್ಯವಾಗಿ ಗೆಳೆತನ ಮಾಡಿಕೊಂಡವರು ಯಾರು ಎಂದು ಸ್ಪಷ್ಟವಾಗಿ ತಿಳಿಯದೆ ಅಲ್ಲಾಹು ನಿಮ್ಮನ್ನು ಈ ಸ್ಥಿತಿಯಲ್ಲಿ ಬಿಟ್ಟುಬಿಡುವನೆಂದು ನೀವು ಭಾವಿಸಿದ್ದೀರಾ? ನೀವು ಮಾಡುವ ಕೆಲಸಗಳನ್ನು ಅವನು ಸೂಕ್ಷ್ಮವಾಗಿ ತಿಳಿಯುತ್ತಿದ್ದಾನೆ.

أَمْ حَسِبْتُمْ أَن تُتْرَكُواْ وَلَمَّا يَعْلَمِ ٱللَّهُ ٱلَّذِينَ جَٰهَدُواْ مِنكُمْ وَلَمْ يَتَّخِذُواْ مِن دُونِ ٱللَّهِ وَلَا رَسُولِهِۦ وَلَا ٱلْمُؤْمِنِينَ وَلِيجَةً ۚ وَٱللَّهُ خَبِيرٌۢ بِمَا تَعْمَلُونَ ﴿١٦﴾

17. ಸತ್ಯನಿಷೇಧಕ್ಕೆ ಸ್ವಯಂ ಸಾಕ್ಷಿಗಳಾಗಿರುತ್ತಾ ಅಲ್ಲಾಹನ ಮಸೀದಿಗಳ ನಿರ್ವಹಣೆ ಮಾಡುವುದು ಬಹುದೇವಾರಾಧಕರಿಗೆ ಸರಿಹೊಂದುವುದಿಲ್ಲ. ಅವರ ಕರ್ಮಗಳು ನಿಷ್ಫಲವಾಗಿವೆ. ಅವರು ನರಕದಲ್ಲಿ ಶಾಶ್ವತವಾಗಿ ವಾಸಿಸುತ್ತಾರೆ.

مَا كَانَ لِلۡمُشۡرِكِينَ أَن يَعۡمُرُواْ مَسَٰجِدَ ٱللَّهِ شَٰهِدِينَ عَلَىٰٓ أَنفُسِهِم بِٱلۡكُفۡرِۚ أُوْلَٰٓئِكَ حَبِطَتۡ أَعۡمَٰلُهُمۡ وَفِي ٱلنَّارِ هُمۡ خَٰلِدُونَ ١٧

18. ಅಲ್ಲಾಹನಲ್ಲಿ ಮತ್ತು ಅಂತ್ಯದಿನದಲ್ಲಿ ವಿಶ್ವಾಸವಿರುವವರು, ನಮಾಝ್ ಸಂಸ್ಥಾಪಿಸುವವರು, ಝಕಾತ್ ನೀಡುವವರು ಮತ್ತು ಅಲ್ಲಾಹನನ್ನು ಬಿಟ್ಟು ಬೇರೆ ಯಾರನ್ನೂ ಭಯಪಡದವರು—ಇವರೇ ಅಲ್ಲಾಹನ ಮಸೀದಿಗಳ ನಿರ್ವಹಣೆ ಮಾಡಬೇಕಾದವರು. ಇವರು ಸನ್ಮಾರ್ಗಿಗಳಲ್ಲಿ ಸೇರುವ ನಿರೀಕ್ಷೆಯಿದೆ.

إِنَّمَا يَعۡمُرُ مَسَٰجِدَ ٱللَّهِ مَنۡ ءَامَنَ بِٱللَّهِ وَٱلۡيَوۡمِ ٱلۡأٓخِرِ وَأَقَامَ ٱلصَّلَوٰةَ وَءَاتَى ٱلزَّكَوٰةَ وَلَمۡ يَخۡشَ إِلَّا ٱللَّهَۖ فَعَسَىٰٓ أُوْلَٰٓئِكَ أَن يَكُونُواْ مِنَ ٱلۡمُهۡتَدِينَ ١٨

19. ಹಜ್ಜ್ ಯಾತ್ರಿಗಳಿಗೆ ಪಾನೀಯ ಸರಬರಾಜು ಮಾಡುವುದನ್ನು ಮತ್ತು ಪವಿತ್ರ ಮಸೀದಿಯ ನಿರ್ವಹಣೆ ಮಾಡುವುದನ್ನು ಅಲ್ಲಾಹನಲ್ಲಿ ಮತ್ತು ಅಂತ್ಯದಿನದಲ್ಲಿ ವಿಶ್ವಾಸವಿಡುವುದಕ್ಕೆ ಹಾಗೂ ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡುವುದಕ್ಕೆ ಸಮಾನವೆಂದು ಪರಿಗಣಿಸುತ್ತೀರಾ? ಅಲ್ಲಾಹನ ದೃಷ್ಟಿಯಲ್ಲಿ ಅವು ಸಮಾನವಲ್ಲ. ಅಕ್ರಮವೆಸಗುವ ಜನರಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ.

أَجَعَلۡتُمۡ سِقَايَةَ ٱلۡحَآجِّ وَعِمَارَةَ ٱلۡمَسۡجِدِ ٱلۡحَرَامِ كَمَنۡ ءَامَنَ بِٱللَّهِ وَٱلۡيَوۡمِ ٱلۡأٓخِرِ وَجَٰهَدَ فِي سَبِيلِ ٱللَّهِۚ لَا يَسۡتَوُۥنَ عِندَ ٱللَّهِۗ وَٱللَّهُ لَا يَهۡدِي ٱلۡقَوۡمَ ٱلظَّٰلِمِينَ ١٩

20. ಸತ್ಯವಿಶ್ವಾಸ ಸ್ವೀಕರಿಸಿದವರು, ವಲಸೆ (ಹಿಜ್ರ) ಮಾಡಿದವರು ಮತ್ತು ತಮ್ಮ ಧನ-ತನುಗಳಿಂದ ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡಿದವರು ಯಾರೋ—ಅವರಿಗೆ ಅಲ್ಲಾಹನ ಬಳಿ ಉನ್ನತ ಸ್ಥಾನಮಾನಗಳಿವೆ. ಅವರೇ ಯಶಸ್ವಿಯಾದವರು.

ٱلَّذِينَ ءَامَنُواْ وَهَاجَرُواْ وَجَٰهَدُواْ فِي سَبِيلِ ٱللَّهِ بِأَمۡوَٰلِهِمۡ وَأَنفُسِهِمۡ أَعۡظَمُ دَرَجَةً عِندَ ٱللَّهِۚ وَأُوْلَٰٓئِكَ هُمُ ٱلۡفَآئِزُونَ ٢٠

21. ಅವರ ಪರಿಪಾಲಕನು (ಅಲ್ಲಾಹು) ಅವರಿಗೆ ತನ್ನ ದಯೆ, ಸಂಪ್ರೀತಿ ಮತ್ತು ಸ್ವರ್ಗೋದ್ಯಾನಗಳ ಸುವಾರ್ತೆಯನ್ನು ನೀಡುತ್ತಾನೆ. ಅಲ್ಲಿ ಅವರಿಗೆ ಶಾಶ್ವತ ಸಂತೋಷಗಳಿವೆ.

يُبَشِّرُهُمۡ رَبُّهُم بِرَحۡمَةٖ مِّنۡهُ وَرِضۡوَٰنٖ وَجَنَّٰتٖ لَّهُمۡ فِيهَا نَعِيمٞ مُّقِيمٌ ٢١

22. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ನಿಶ್ಚಯವಾಗಿಯೂ ಅಲ್ಲಾಹನ ಬಳಿ ಅತಿದೊಡ್ಡ ಪ್ರತಿಫಲವಿದೆ.

خَٰلِدِينَ فِيهَآ أَبَدًاۚ إِنَّ ٱللَّهَ عِندَهُۥٓ أَجۡرٌ عَظِيمٞ ٢٢

23. ಓ ಸತ್ಯವಿಶ್ವಾಸಿಗಳೇ! ನಿಮ್ಮ ತಂದೆಯರನ್ನು ಮತ್ತು ನಿಮ್ಮ ಸಹೋದರರನ್ನು ನಿಮ್ಮ ಮಿತ್ರರನ್ನಾಗಿ ಸ್ವೀಕರಿಸಬೇಡಿ—ಅವರು ಸತ್ಯವಿಶ್ವಾಸಕ್ಕಿಂತ ಹೆಚ್ಚು ಸತ್ಯನಿಷೇಧವನ್ನು ಪ್ರೀತಿಸುವುದಾದರೆ. ನಿಮ್ಮಲ್ಲಿ ಯಾರು ಅವರನ್ನು ಮಿತ್ರರನ್ನಾಗಿ ಸ್ವೀಕರಿಸುತ್ತಾರೋ ಅವರೇ ಅಕ್ರಮಿಗಳು.

يَٰٓأَيُّهَا ٱلَّذِينَ ءَامَنُواْ لَا تَتَّخِذُوٓاْ ءَابَآءَكُمۡ وَإِخۡوَٰنَكُمۡ أَوۡلِيَآءَ إِنِ ٱسۡتَحَبُّواْ ٱلۡكُفۡرَ عَلَى ٱلۡإِيمَٰنِۚ وَمَن يَتَوَلَّهُم مِّنكُمۡ فَأُوْلَٰٓئِكَ هُمُ ٱلظَّٰلِمُونَ ٢٣

24. ಹೇಳಿರಿ: "ನಿಮ್ಮ ತಂದೆಯರು, ನಿಮ್ಮ ಮಕ್ಕಳು, ನಿಮ್ಮ

قُلۡ إِن كَانَ ءَابَآؤُكُمۡ وَأَبۡنَآؤُكُمۡ وَإِخۡوَٰنُكُمۡ

وَأَزۡوَٰجُكُمۡ وَعَشِيرَتُكُمۡ وَأَمۡوَٰلٌ ٱقۡتَرَفۡتُمُوهَا وَتِجَٰرَةٞ تَخۡشَوۡنَ كَسَادَهَا وَمَسَٰكِنُ تَرۡضَوۡنَهَآ أَحَبَّ إِلَيۡكُم مِّنَ ٱللَّهِ وَرَسُولِهِۦ وَجِهَادٖ فِي سَبِيلِهِۦ فَتَرَبَّصُواْ حَتَّىٰ يَأۡتِيَ ٱللَّهُ بِأَمۡرِهِۦۗ وَٱللَّهُ لَا يَهۡدِي ٱلۡقَوۡمَ ٱلۡفَٰسِقِينَ ﴿٢٤﴾

ಸಹೋದರರು, ನಿಮ್ಮ ಪತ್ನಿಯರು, ನಿಮ್ಮ ಸಂಬಂಧಿಕರು, ನೀವು ಸಂಪಾದಿಸಿದ ಆಸ್ತಿಗಳು, ನಷ್ಟವಾಗಬಹುದೆಂದು ನೀವು ಹೆದರುವ ವ್ಯಾಪಾರಗಳು, ನೀವು ಪ್ರೀತಿಸುವ ನಿಮ್ಮ ಮನೆಗಳು—ಇವೆಲ್ಲವೂ ನಿಮಗೆ ಅಲ್ಲಾಹನಿಗಿಂತ, ಅವನ ಸಂದೇಶವಾಹಕರಿಗಿಂತ ಮತ್ತು ಅವನ ಮಾರ್ಗದಲ್ಲಿ ಮಾಡುವ ಹೋರಾಟಕ್ಕಿಂತ ಹೆಚ್ಚು ಪ್ರೀತಿಯುಳ್ಳದ್ದಾಗಿದ್ದರೆ, ಅಲ್ಲಾಹು ಅವನ ಆಜ್ಞೆಯನ್ನು ತರುವ ತನಕ ಕಾಯಿರಿ. ಅವಿಧೇಯತೆ ತೋರುವ ಜನರಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ."

---

لَقَدۡ نَصَرَكُمُ ٱللَّهُ فِي مَوَاطِنَ كَثِيرَةٖ وَيَوۡمَ حُنَيۡنٍ إِذۡ أَعۡجَبَتۡكُمۡ كَثۡرَتُكُمۡ فَلَمۡ تُغۡنِ عَنكُمۡ شَيۡـٔٗا وَضَاقَتۡ عَلَيۡكُمُ ٱلۡأَرۡضُ بِمَا رَحُبَتۡ ثُمَّ وَلَّيۡتُم مُّدۡبِرِينَ ﴿٢٥﴾

25. ನಿಶ್ಚಯವಾಗಿಯೂ ಅನೇಕ ಸ್ಥಳಗಳಲ್ಲಿ ಅಲ್ಲಾಹು ನಿಮಗೆ ಸಹಾಯ ಮಾಡಿದ್ದಾನೆ. ಹುನೈನ್ ಯುದ್ಧ ನಡೆದ ದಿನದಲ್ಲಿ ಕೂಡ (ಅವನು ನಿಮಗೆ ಸಹಾಯ ಮಾಡಿದ್ದಾನೆ). ಅಂದು ನಿಮ್ಮ ಸಂಖ್ಯಾಬಲವನ್ನು ನೋಡಿ ನೀವು ಪುಳಕಿತರಾದ ಸಂದರ್ಭ. ಆದರೆ ಅದು ನಿಮಗೆ ಯಾವುದೇ ಉಪಕಾರ ಮಾಡಲಿಲ್ಲ. ಭೂಮಿಯು ವಿಶಾಲವಾಗಿದ್ದೂ ಸಹ ನಿಮಗೆ ಸಂಕುಚಿತವಾದಂತೆ ತೋರಿತು. ನಂತರ ನೀವು ದಿಕ್ಕೆಟ್ಟು ಪಲಾಯನ ಮಾಡಿದಿರಿ.[1]

---

ثُمَّ أَنزَلَ ٱللَّهُ سَكِينَتَهُۥ عَلَىٰ رَسُولِهِۦ وَعَلَى ٱلۡمُؤۡمِنِينَ وَأَنزَلَ جُنُودٗا لَّمۡ تَرَوۡهَا وَعَذَّبَ ٱلَّذِينَ كَفَرُواْۚ وَذَٰلِكَ جَزَآءُ ٱلۡكَٰفِرِينَ ﴿٢٦﴾

26. ನಂತರ ಅಲ್ಲಾಹು ಅವನ ಸಂದೇಶವಾಹಕರ ಮೇಲೆ ಮತ್ತು ಸತ್ಯವಿಶ್ವಾಸಿಗಳ ಮೇಲೆ ಅವನ ಕಡೆಯ ಶಾಂತಿಯನ್ನು ಇಳಿಸಿಕೊಟ್ಟನು. ನಿಮಗೆ ಕಾಣದಂತಹ ಸೈನ್ಯಗಳನ್ನು ಕಳುಹಿಸಿ ಸತ್ಯನಿಷೇಧಿಗಳನ್ನು ಶಿಕ್ಷಿಸಿದನು. ಅದು ಸತ್ಯನಿಷೇಧಿಗಳಿಗೆ ಪ್ರತಿಫಲವಾಗಿದೆ.

---

ثُمَّ يَتُوبُ ٱللَّهُ مِنۢ بَعۡدِ ذَٰلِكَ عَلَىٰ مَن يَشَآءُۗ وَٱللَّهُ غَفُورٞ رَّحِيمٞ ﴿٢٧﴾

27. ನಂತರ ಅದರ ಬಳಿಕವೂ ಅಲ್ಲಾಹು ಅವನು ಇಚ್ಛಿಸಿದವರ ಪಶ್ಚಾತ್ತಾಪವನ್ನು ಸ್ವೀಕರಿಸುವನು. ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

---

يَٰٓأَيُّهَا ٱلَّذِينَ ءَامَنُوٓاْ إِنَّمَا ٱلۡمُشۡرِكُونَ نَجَسٞ فَلَا يَقۡرَبُواْ ٱلۡمَسۡجِدَ ٱلۡحَرَامَ بَعۡدَ عَامِهِمۡ هَٰذَاۚ وَإِنۡ خِفۡتُمۡ عَيۡلَةٗ فَسَوۡفَ يُغۡنِيكُمُ ٱللَّهُ مِن

28. ಓ ಸತ್ಯವಿಶ್ವಾಸಿಗಳೇ! ನಿಶ್ಚಯವಾಗಿಯೂ ಬಹುದೇವವಿಶ್ವಾಸಿಗಳು ಅಶುದ್ಧರಾಗಿದ್ದಾರೆ.[2] ಆದ್ದರಿಂದ ಈ ವರ್ಷದ ಬಳಿಕ ಅವರು ಪವಿತ್ರ ಮಸೀದಿಯ ಸಮೀಪಕ್ಕೂ ಬರದಿರಲಿ. ನಿಮಗೆ ಬಡತನದ ಬಗ್ಗೆ ಆತಂಕವಿದ್ದರೆ, ಅಲ್ಲಾಹು ಇಚ್ಛಿಸಿದರೆ ಸದ್ಯವೇ

---

[1] ಹಿಜ್ರ 8ನೇ ವರ್ಷದಲ್ಲಿ ಹುನೈನ್ ಯುದ್ಧ ನಡೆಯಿತು. ಮುಸ್ಲಿಮರು ಮಕ್ಕಾ ವಶಪಡಿಸಿದ್ದನ್ನು ಕಂಡು ರೋಷದಿಂದ ಕೆಲವು ಸತ್ಯನಿಷೇಧಿ ಗೋತ್ರಗಳು ಮುಸ್ಲಿಮರ ವಿರುದ್ಧ ಯುದ್ಧ ಸಾರಿದರು. ಈ ಯುದ್ಧದಲ್ಲಿ ಮುಸ್ಲಿಮರು ಗಣನೀಯ ಸಂಖ್ಯೆಯಲ್ಲಿದ್ದೂ ಸಹ ಆರಂಭದಲ್ಲಿ ಸೋಲನ್ನು ಕಂಡರು. ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಕೆಲವು ಆಪ್ತ ಸಂಗಡಿಗರ ಹೊರತು ಉಳಿದವರು ಯುದ್ಧರಂಗದಿಂದ ಪಲಾಯನ ಮಾಡಿದರು. ಆದರೆ ಕೆಲವೇ ಕ್ಷಣಗಳಲ್ಲಿ ಅವರು ಮರಳಿ ಬಂದು ವೀರಾವೇಶದಿಂದ ಹೋರಾಡಿ ಯುದ್ಧವನ್ನು ಗೆದ್ದರು.

[2] ಅಶುದ್ಧರು ಎಂದರೆ ದೈಹಿಕವಾಗಿ ಅಶುದ್ಧರು ಎಂದಲ್ಲ. ಬದಲಿಗೆ, ಅವರ ನಂಬಿಕೆಗಳು ಮತ್ತು ಕರ್ಮಗಳು ಅಶುದ್ಧವಾಗಿವೆ ಎಂದರ್ಥ.

ಅವನು ತನ್ನ ಔದಾರ್ಯದಿಂದ ನಿಮ್ಮನ್ನು ಧನಿಕರನ್ನಾಗಿ ಮಾಡುವನು.[1] ನಿಶ್ಚಯವಾಗಿಯೂ ಅಲ್ಲಾಹು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ.

فَضۡلِهِۦٓ إِن شَآءَۚ إِنَّ ٱللَّهَ عَلِيمٌ حَكِيمٞ ﴿٢٨﴾

---

29. ಗ್ರಂಥ ನೀಡಲಾದವರಲ್ಲಿ ಯಾರು ಅಲ್ಲಾಹನಲ್ಲಿ ಮತ್ತು ಅಂತ್ಯದಿನದಲ್ಲಿ ವಿಶ್ವಾಸವಿಡುವುದಿಲ್ಲವೋ, ಅಲ್ಲಾಹು ಮತ್ತು ಅವನ ಸಂದೇಶವಾಹಕರು ನಿಷೇಧಿಸಿದ್ದನ್ನು ನಿಷಿದ್ಧವೆಂದು ಪರಿಗ-ಣಿಸುವುದಿಲ್ಲವೋ ಮತ್ತು ಸತ್ಯಧರ್ಮವನ್ನು ತಮ್ಮ ಧರ್ಮವಾಗಿ ಸ್ವೀಕರಿಸುವುದಿಲ್ಲವೋ ಅವರ ವಿರುದ್ಧ ಯುದ್ಧ ಮಾಡಿರಿ—ಅವರು ದೈನ್ಯತೆಯಿಂದ ಜಿಝ್ಯ ನೀಡುವ ತನಕ.

قَٰتِلُواْ ٱلَّذِينَ لَا يُؤۡمِنُونَ بِٱللَّهِ وَلَا بِٱلۡيَوۡمِ ٱلۡأٓخِرِ وَلَا يُحَرِّمُونَ مَا حَرَّمَ ٱللَّهُ وَرَسُولُهُۥ وَلَا يَدِينُونَ دِينَ ٱلۡحَقِّ مِنَ ٱلَّذِينَ أُوتُواْ ٱلۡكِتَٰبَ حَتَّىٰ يُعۡطُواْ ٱلۡجِزۡيَةَ عَن يَدٖ وَهُمۡ صَٰغِرُونَ ﴿٢٩﴾

---

30. ಉಝೈರ್ (ಎಜ್ರಾ) ಅಲ್ಲಾಹನ ಮಗನೆಂದು ಯಹೂದಿಗಳು ಹೇಳಿದರು. ಮಸೀಹ್ (ಯೇಸು) ಅಲ್ಲಾಹನ ಮಗನೆಂದು ಕ್ರೈಸ್ತರು ಹೇಳಿದರು. ಇವು ಅವರು ಅವರ ಬಾಯಿಂದ ಹೇಳುವ ಮಾತುಗಳಾಗಿವೆ. ಅವರಿಗಿಂತ ಮೊದಲು ಸತ್ಯವನ್ನು ನಿಷೇಧಿಸಿದವರ ಮಾತುಗಳನ್ನು ಅವರು ಅನುಕರಿಸುತ್ತಿದ್ದಾರೆ. ಅಲ್ಲಾಹು ಅವರನ್ನು ನಾಶ ಮಾಡಲಿ. ಅವರನ್ನು ಹೇಗೆ ದಾರಿತಪ್ಪಿ-ಸಲಾಗುತ್ತಿದೆಯೆಂದು ನೋಡಿ.

وَقَالَتِ ٱلۡيَهُودُ عُزَيۡرٌ ٱبۡنُ ٱللَّهِ وَقَالَتِ ٱلنَّصَٰرَى ٱلۡمَسِيحُ ٱبۡنُ ٱللَّهِۖ ذَٰلِكَ قَوۡلُهُم بِأَفۡوَٰهِهِمۡۖ يُضَٰهِـُٔونَ قَوۡلَ ٱلَّذِينَ كَفَرُواْ مِن قَبۡلُۚ قَٰتَلَهُمُ ٱللَّهُۖ أَنَّىٰ يُؤۡفَكُونَ ﴿٣٠﴾

---

31. ಅವರು ಅಲ್ಲಾಹನನ್ನು ಬಿಟ್ಟು ತಮ್ಮ ವಿದ್ವಾಂಸರನ್ನೂ ಮತ್ತು ಸಂತರನ್ನು, ಹಾಗೂ ಮರ್ಯಮರ ಮಗ ಮಸೀಹ ಈಸಾರನ್ನು ಪರಿಪಾಲಕರನ್ನಾಗಿ (ದೇವರುಗಳನ್ನಾಗಿ) ಸ್ವೀಕರಿಸಿದರು. ಏಕೈಕ ದೇವನನ್ನು ಮಾತ್ರ ಆರಾಧಿಸಬೇಕೆಂದು ಅವರಿಗೆ ಆದೇಶಿಸಲಾಗಿತ್ತು. ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ಅವರು ಮಾಡುವ ಸಹಭಾಗಿತ್ವ (ಶಿರ್ಕ್) ದಿಂದ ಅವನು ಎಷ್ಟೋ ಪರಿಶುದ್ಧನಾಗಿದ್ದಾನೆ.

ٱتَّخَذُوٓاْ أَحۡبَارَهُمۡ وَرُهۡبَٰنَهُمۡ أَرۡبَابٗا مِّن دُونِ ٱللَّهِ وَٱلۡمَسِيحَ ٱبۡنَ مَرۡيَمَ وَمَآ أُمِرُوٓاْ إِلَّا لِيَعۡبُدُوٓاْ إِلَٰهٗا وَٰحِدٗاۖ لَّآ إِلَٰهَ إِلَّا هُوَۚ سُبۡحَٰنَهُۥ عَمَّا يُشۡرِكُونَ ﴿٣١﴾

---

32. ಅವರು ತಮ್ಮ ಬಾಯಿಗಳಿಂದ ಅಲ್ಲಾಹನ ಬೆಳಕನ್ನು ನಂದಿಸಲು ಬಯಸುತ್ತಾರೆ. ಆದರೆ ಅಲ್ಲಾಹು ತನ್ನ ಬೆಳಕನ್ನು ಪೂರ್ಣಗೊಳಿಸದೆ ಬಿಡಲು ಅಸಮ್ಮತಿ ಸೂಚಿಸಿದ್ದಾನೆ. ಸತ್ಯನಿಷೇಧಿಗಳು ಎಷ್ಟು ದ್ವೇಷಿಸಿದರೂ ಸಹ.

يُرِيدُونَ أَن يُطۡفِـُٔواْ نُورَ ٱللَّهِ بِأَفۡوَٰهِهِمۡ وَيَأۡبَى ٱللَّهُ إِلَّآ أَن يُتِمَّ نُورَهُۥ وَلَوۡ كَرِهَ ٱلۡكَٰفِرُونَ ﴿٣٢﴾

---

33. ಸನ್ಮಾರ್ಗ ಮತ್ತು ಸತ್ಯಧರ್ಮದೊಂದಿಗೆ ತನ್ನ ಸಂದೇಶವಾಹಕ-ರನ್ನು ಕಳುಹಿಸಿದ್ದು ಅವನೇ. ಎಲ್ಲಾ ಧರ್ಮಗಳ ಮೇಲೆ ಅದು ಜಯಗಳಿಸುವಂತೆ ಮಾಡುವುದಕ್ಕಾಗಿ. ಬಹುದೇವವಿಶ್ವಾಸಿಗಳು

هُوَ ٱلَّذِيٓ أَرۡسَلَ رَسُولَهُۥ بِٱلۡهُدَىٰ وَدِينِ ٱلۡحَقِّ لِيُظۡهِرَهُۥ عَلَى ٱلدِّينِ كُلِّهِۦ وَلَوۡ كَرِهَ ٱلۡمُشۡرِكُونَ ﴿٣٣﴾

---

[1] ಬಹುದೇವವಿಶ್ವಾಸಿಗಳು ಹಜ್ಜ್ ನಿರ್ವಹಿಸಲು ಮಕ್ಕಾಗೆ ಬರದಿದ್ದರೆ ತಮ್ಮ ವ್ಯಾಪಾರಕ್ಕೆ ಕುಂದುಂಟಾಗಬಹುದೆಂದು ಕೆಲವು ಮುಸ್ಲಿಮರು ಆತಂಕಗೊಂಡಿದ್ದರು.

ಎಷ್ಟು ದ್ವೇಷಿಸಿದರೂ ಸಹ.

34. ಓ ಸತ್ಯವಿಶ್ವಾಸಿಗಳೇ! ನಿಶ್ಚಯವಾಗಿಯೂ ವಿದ್ವಾಂಸರು ಮತ್ತು ಸಂತರಲ್ಲಿ ಹೆಚ್ಚಿನವರು ಅನ್ಯಾಯವಾಗಿ ಜನರ ಧನವನ್ನು ತಿನ್ನುತ್ತಾರೆ ಮತ್ತು ಅಲ್ಲಾಹನ ಮಾರ್ಗದಿಂದ ಜನರನ್ನು ತಡೆಯುತ್ತಾರೆ. ಯಾರು ಚಿನ್ನ ಮತ್ತು ಬೆಳ್ಳಿಯನ್ನು ದಾಸ್ತಾನು ಮಾಡುತ್ತಾರೋ ಮತ್ತು ಅದನ್ನು ಅಲ್ಲಾಹನ ಮಾರ್ಗದಲ್ಲಿ ಖರ್ಚು ಮಾಡುವುದಿಲ್ಲವೋ ಅವರಿಗೆ ಯಾತನಾಮಯ ಶಿಕ್ಷೆಯ ಬಗ್ಗೆ ಸುವಾರ್ತೆಯನ್ನು ನೀಡಿರಿ.

يَـٰٓأَيُّهَا ٱلَّذِينَ ءَامَنُوٓاْ إِنَّ كَثِيرٗا مِّنَ ٱلۡأَحۡبَارِ وَٱلرُّهۡبَانِ لَيَأۡكُلُونَ أَمۡوَٰلَ ٱلنَّاسِ بِٱلۡبَٰطِلِ وَيَصُدُّونَ عَن سَبِيلِ ٱللَّهِۗ وَٱلَّذِينَ يَكۡنِزُونَ ٱلذَّهَبَ وَٱلۡفِضَّةَ وَلَا يُنفِقُونَهَا فِي سَبِيلِ ٱللَّهِ فَبَشِّرۡهُم بِعَذَابٍ أَلِيمٖ ﴿٣٤﴾

35. ನರಕಾಗ್ನಿಯಲ್ಲಿ ಅವುಗಳನ್ನು ಕಾಯಿಸಿ, ನಂತರ ಅದರಿಂದ ಅವರ ಹಣೆ, ಪಾರ್ಶ್ವ ಮತ್ತು ಬೆನ್ನುಗಳಿಗೆ ಬರೆ ಹಾಕುವ ದಿನ. (ಅವರೊಡನೆ ಹೇಳಲಾಗುವುದು): “ಇದು ನೀವು ನಿಮಗಾಗಿ ದಾಸ್ತಾನು ಮಾಡಿಟ್ಟ ಆಸ್ತಿಯಾಗಿದೆ. ನೀವು ದಾಸ್ತಾನು ಮಾಡಿದ ಆಸ್ತಿಯ ರುಚಿಯನ್ನು ನೋಡಿರಿ.”

يَوۡمَ يُحۡمَىٰ عَلَيۡهَا فِي نَارِ جَهَنَّمَ فَتُكۡوَىٰ بِهَا جِبَاهُهُمۡ وَجُنُوبُهُمۡ وَظُهُورُهُمۡۖ هَٰذَا مَا كَنَزۡتُمۡ لِأَنفُسِكُمۡ فَذُوقُواْ مَا كُنتُمۡ تَكۡنِزُونَ ﴿٣٥﴾

36. ನಿಶ್ಚಯವಾಗಿಯೂ ಅಲ್ಲಾಹನ ಬಳಿ ತಿಂಗಳುಗಳ ಸಂಖ್ಯೆ ಹನ್ನೆರಡು. ಭೂಮ್ಯಾಕಾಶಗಳನ್ನು ಸೃಷ್ಟಿಸಿದ ದಿನದಂದಲೇ ಇದು ಅಲ್ಲಾಹನ ಗ್ರಂಥದಲ್ಲಿದೆ. ಅವುಗಳಲ್ಲಿ ನಾಲ್ಕು ಪವಿತ್ರ ತಿಂಗಳುಗಳು.[1] ಅದೇ ನೇರವಾದ ಧರ್ಮ. ಆದ್ದರಿಂದ ಆ ತಿಂಗಳುಗಳಲ್ಲಿ ನೀವು ನಿಮ್ಮ ಮೇಲೆಯೇ ಅಕ್ರಮವೆಸಗಬೇಡಿ. ಬಹುದೇವವಿಶ್ವಾಸಿಗಳು ಒಟ್ಟಾಗಿ ನಿಮ್ಮ ವಿರುದ್ಧ ಯುದ್ಧ ಮಾಡುವಂತೆ ನೀವೂ ಕೂಡ ಒಟ್ಟಾಗಿ ಅವರ ವಿರುದ್ಧ ಯುದ್ಧ ಮಾಡಿರಿ. ತಿಳಿಯಿರಿ! ನಿಶ್ಚಯವಾಗಿಯೂ ಅಲ್ಲಾಹು ದೇವಭಯ-ವುಳ್ಳವರೊಡನೆ ಇದ್ದಾನೆ.

إِنَّ عِدَّةَ ٱلشُّهُورِ عِندَ ٱللَّهِ ٱثۡنَا عَشَرَ شَهۡرٗا فِي كِتَٰبِ ٱللَّهِ يَوۡمَ خَلَقَ ٱلسَّمَٰوَٰتِ وَٱلۡأَرۡضَ مِنۡهَآ أَرۡبَعَةٌ حُرُمٞۚ ذَٰلِكَ ٱلدِّينُ ٱلۡقَيِّمُۚ فَلَا تَظۡلِمُواْ فِيهِنَّ أَنفُسَكُمۡۚ وَقَٰتِلُواْ ٱلۡمُشۡرِكِينَ كَآفَّةٗ كَمَا يُقَٰتِلُونَكُمۡ كَآفَّةٗۚ وَٱعۡلَمُوٓاْ أَنَّ ٱللَّهَ مَعَ ٱلۡمُتَّقِينَ ﴿٣٦﴾

37. ನಿಶ್ಚಯವಾಗಿಯೂ ನಸೀ (ಪವಿತ್ರ ತಿಂಗಳುಗಳನ್ನು ಹಿಂದೆ-ಮುಂದೆ ಮಾಡುವುದು) ಸತ್ಯನಿಷೇಧದಲ್ಲಿರುವ ಹೆಚ್ಚಳವಾಗಿದೆ. ಇದರಿಂದ ಸತ್ಯನಿಷೇಧಿಗಳನ್ನು ಇನ್ನೂ ಹೆಚ್ಚು ದಾರಿತಪ್ಪಿಸಲಾಗುತ್ತಿದೆ. ಒಂದು ವರ್ಷ ಅವರು ಅದನ್ನು (ಪವಿತ್ರ ತಿಂಗಳನ್ನು) ಪವಿತ್ರವಲ್ಲ ಎನ್ನುತ್ತಾರೆ ಮತ್ತು ಇನ್ನೊಂದು ವರ್ಷ ಪವಿತ್ರ ಎನ್ನುತ್ತಾರೆ. ಹೀಗೆ ಅವರು ಅಲ್ಲಾಹು ಪವಿತ್ರಗೊಳಿಸಿದ ತಿಂಗಳುಗಳ ಸಂಖ್ಯೆಯನ್ನು ಸರಿಹೊಂದಿಸಿ ಅಲ್ಲಾಹು ನಿಷೇಧಿಸಿದ್ದನ್ನು ಅನುಮತಿಸುತ್ತಾರೆ.[2]

إِنَّمَا ٱلنَّسِيٓءُ زِيَادَةٞ فِي ٱلۡكُفۡرِۖ يُضَلُّ بِهِ ٱلَّذِينَ كَفَرُواْ يُحِلُّونَهُۥ عَامٗا وَيُحَرِّمُونَهُۥ عَامٗا لِّيُوَاطِـُٔواْ عِدَّةَ مَا حَرَّمَ ٱللَّهُ فَيُحِلُّواْ مَا حَرَّمَ ٱللَّهُۚ زُيِّنَ لَهُمۡ سُوٓءُ أَعۡمَٰلِهِمۡۗ وَٱللَّهُ لَا يَهۡدِي ٱلۡقَوۡمَ ٱلۡكَٰفِرِينَ ﴿٣٧﴾

[1] ಅಂದರೆ ಮುಹರ್‍ರಂ, ರಜಬ್, ದುಲ್‌ಕಅದ ಮತ್ತು ದುಲ್‌ಹಿಜ್ಜ ತಿಂಗಳುಗಳು.

[2] ಇಸ್ಲಾಮೀ ಪೂರ್ವಕಾಲದಲ್ಲಿ ಅರಬ್ಬರು ವರ್ಷದಲ್ಲಿ ನಾಲ್ಕು ತಿಂಗಳುಗಳನ್ನು ಪವಿತ್ರವೆಂದು ಪರಿಗಣಿಸುತ್ತಿದ್ದರು. ಆ ತಿಂಗಳುಗಳಲ್ಲಿ ಅವರು ಯುದ್ಧ ಮಾಡುತ್ತಿರಲಿಲ್ಲ. ಆದರೆ ಪ್ರತಿ ವರ್ಷವೂ ಅವರು ಅದೇ ತಿಂಗಳುಗಳನ್ನು ಪವಿತ್ರವೆಂದು ಪರಿಗಣಿಸುತ್ತಿರಲಿಲ್ಲ. ಬದಲಿಗೆ, ತಮಗೆ ಹೊಂದಿಕೆಯಾಗುವಂತೆ ಅವುಗಳನ್ನು ಹಿಂದೆ ಮುಂದೆ ಮಾಡುತ್ತಿದ್ದರು. ಒಂದು ವರ್ಷ ಅವರು ಮುಹರ್‍ರಂ ತಿಂಗಳನ್ನು ಪವಿತ್ರವೆಂದು

ಅವರ ದುಷ್ಕರ್ಮಗಳನ್ನು ಅವರಿಗೆ ಅಲಂಕರಿಸಿಕೊಡ-
ಲಾಗಿದೆ. ಸತ್ಯನಿಷೇಧಿಗಳಾದ ಜನರಿಗೆ ಅಲ್ಲಾಹು ಸನ್ಮಾರ್ಗವನ್ನು
ತೋರಿಸುವುದಿಲ್ಲ.

---

38. ಓ ಸತ್ಯವಿಶ್ವಾಸಿಗಳೇ! ನಿಮಗೇನಾಗಿದೆ? ಅಲ್ಲಾಹನ ಮಾರ್ಗದಲ್ಲಿ ಯುದ್ಧಕ್ಕೆ ಹೊರಡಿ ಎಂದು ನಿಮ್ಮೊಡನೆ ಹೇಳಲಾದಾಗ ನೀವು ಭೂಮಿಗೆ ಅಂಟಿಕೊಳ್ಳುತ್ತೀರಿ! ನೀವು ಪರಲೋಕದ ಬದಲು ಇಹಲೋಕವನ್ನೇ ನೆಚ್ಚಿಕೊಂಡಿದ್ದೀರಾ? ಆದರೆ ಪರಲೋಕಕ್ಕೆ ಹೋಲಿಸಿದರೆ ಇಹಲೋಕದ ಆನಂದಗಳು ಕ್ಷಣಿಕವಾಗಿವೆ.

يَٰٓأَيُّهَا ٱلَّذِينَ ءَامَنُواْ مَا لَكُمۡ إِذَا قِيلَ لَكُمُ ٱنفِرُواْ فِي سَبِيلِ ٱللَّهِ ٱثَّاقَلۡتُمۡ إِلَى ٱلۡأَرۡضِۚ أَرَضِيتُم بِٱلۡحَيَوٰةِ ٱلدُّنۡيَا مِنَ ٱلۡأٓخِرَةِۚ فَمَا مَتَٰعُ ٱلۡحَيَوٰةِ ٱلدُّنۡيَا فِي ٱلۡأٓخِرَةِ إِلَّا قَلِيلٌ ٣٨

---

39. ನೀವು ಯುದ್ಧಕ್ಕೆ ಹೊರಡದಿದ್ದರೆ ಅಲ್ಲಾಹು ನಿಮಗೆ ಯಾತನಾಮಯ ಶಿಕ್ಷೆಯನ್ನು ನೀಡುವನು ಮತ್ತು ನಿಮ್ಮ ಬದಲಿಗೆ ನೀವಲ್ಲದ ಬೇರೆ ಜನತೆಯನ್ನು ತರುವನು. ಅಲ್ಲಾಹನಿಗೆ ಯಾವುದೇ ತೊಂದರೆ ಮಾಡಲು ನಿಮ್ಮಿಂದ ಸಾಧ್ಯವಿಲ್ಲ. ಅಲ್ಲಾಹು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

إِلَّا تَنفِرُواْ يُعَذِّبۡكُمۡ عَذَابًا أَلِيمٗا وَيَسۡتَبۡدِلۡ قَوۡمًا غَيۡرَكُمۡ وَلَا تَضُرُّوهُ شَيۡـٔٗاۗ وَٱللَّهُ عَلَىٰ كُلِّ شَيۡءٖ قَدِيرٌ ٣٩

---

40. ನೀವು ಅವರಿಗೆ (ಪ್ರವಾದಿಗೆ) ಸಹಾಯ ಮಾಡುವುದಿಲ್ಲವೆಂದಾದರೆ, ಅಲ್ಲಾಹು ಅವರಿಗೆ ಖಂಡಿತ ಸಹಾಯ ಮಾಡಿದ್ದಾನೆ. ಅವರು ಇಬ್ಬರಲ್ಲಿ ಒಬ್ಬರಾಗಿದ್ದು, ಸತ್ಯನಿಷೇಧಿಗಳು ಅವರನ್ನು (ಮಕ್ಕಾದಿಂದ) ಹೊರದಬ್ಬಿ, ಅವರಿಬ್ಬರು[1] ಗುಹೆಯಲ್ಲಿ ಆಶ್ರಯ ಪಡೆದಾಗ ಮತ್ತು ಅವರು ತಮ್ಮ ಸಹಚರನೊಡನೆ, "ಸಂಕಟಪಡಬೇಡ, ನಿಶ್ಚಯವಾಗಿಯೂ ಅಲ್ಲಾಹು ನಮ್ಮ ಜೊತೆಗಿದ್ದಾನೆ" ಎಂದು ಹೇಳಿದ ಸಂದರ್ಭ. ಆಗ ಅಲ್ಲಾಹು ಅವರ ಮೇಲೆ ತನ್ನ ಕಡೆಯ ಶಾಂತಿಯನ್ನು ಇಳಿಸಿದನು, ನೀವು ನೋಡದೇ ಇರುವಂತಹ ಸೈನ್ಯಗಳ ಮೂಲಕ ಅವರಿಗೆ ಶಕ್ತಿಯನ್ನು ನೀಡಿದನು ಮತ್ತು ಸತ್ಯನಿಷೇಧಿಗಳ ವಚನವನ್ನು ಕೆಳಮಟ್ಟಕ್ಕಿಳಿಸಿದನು. ಅಲ್ಲಾಹನ ವಚನವು ಅತ್ಯುನ್ನತವಾಗಿದೆ. ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

إِلَّا تَنصُرُوهُ فَقَدۡ نَصَرَهُ ٱللَّهُ إِذۡ أَخۡرَجَهُ ٱلَّذِينَ كَفَرُواْ ثَانِيَ ٱثۡنَيۡنِ إِذۡ هُمَا فِي ٱلۡغَارِ إِذۡ يَقُولُ لِصَٰحِبِهِۦ لَا تَحۡزَنۡ إِنَّ ٱللَّهَ مَعَنَاۖ فَأَنزَلَ ٱللَّهُ سَكِينَتَهُۥ عَلَيۡهِ وَأَيَّدَهُۥ بِجُنُودٖ لَّمۡ تَرَوۡهَا وَجَعَلَ كَلِمَةَ ٱلَّذِينَ كَفَرُواْ ٱلسُّفۡلَىٰۗ وَكَلِمَةُ ٱللَّهِ هِيَ ٱلۡعُلۡيَاۗ وَٱللَّهُ عَزِيزٌ حَكِيمٌ ٤٠

---

41. ನೀವು ಹಗುರವಾಗಿರುವಾಗಲೂ ಭಾರವಾಗಿರುವಾಗಲೂ ಯುದ್ಧಕ್ಕೆ ಹೊರಡಿರಿ.[2] ಅಲ್ಲಾಹನ ಮಾರ್ಗದಲ್ಲಿ ನಿಮ್ಮ

ٱنفِرُواْ خِفَافٗا وَثِقَالٗا وَجَٰهِدُواْ بِأَمۡوَٰلِكُمۡ وَأَنفُسِكُمۡ فِي سَبِيلِ ٱللَّهِۚ ذَٰلِكُمۡ خَيۡرٞ لَّكُمۡ

---

ಪರಿಗಣಿಸಿದರೆ ಇನ್ನೊಂದು ವರ್ಷ ಅದು ಅವರಿಗೆ ಹೊಂದಿಕೆಯಾಗದಿದ್ದರೆ ಅದನ್ನು ಪವಿತ್ರವೆಂದು ಪರಿಗಣಿಸುತ್ತಿರಲಿಲ್ಲ.

[1] ಅಂದರೆ ಪ್ರವಾದಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮತ್ತು ಅವರ ಆಪ್ತ ಸಂಗಡಿಗರಾದ ಅಬೂಬಕರ್ (ಅವರ ಮೇಲೆ ಅಲ್ಲಾಹನ ಸಂತೃಪ್ತಿಯಿರಲಿ). ಈ ಘಟನೆ ನಡೆದದ್ದು ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮತ್ತು ಅಬೂಬಕರ್ (ಅವರ ಮೇಲೆ ಅಲ್ಲಾಹನ ಸಂತೃಪ್ತಿಯಿರಲಿ) ಮಕ್ಕಾದಿಂದ ಪಲಾಯನ ಮಾಡಿ ಹತ್ತಿರದ ಸೌರ್ ಗುಹೆಯಲ್ಲಿ ಆಶ್ರಯಪಡೆದಾಗ.

[2] ಅಂದರೆ ನೀವು ಯುವಕರಾಗಿದ್ದರೂ, ವೃದ್ಧರಾಗಿದ್ದರೂ, ಸಂತೋಷದಲ್ಲಿದ್ದರೂ, ಕಷ್ಟದಲ್ಲಿದ್ದರೂ, ವಾಹನವಿದ್ದರೂ, ಇಲ್ಲದಿದ್ದರೂ ಎಲ್ಲಾ

إِن كُنتُمۡ تَعۡلَمُونَ ﴿٤١﴾

ತನು-ಧನಗಳಿಂದ ಯುದ್ಧ ಮಾಡಿರಿ. ನೀವು ತಿಳಿದವರಾಗಿದ್ದರೆ ಅದೇ ನಿಮಗೆ ಶ್ರೇಷ್ಠವಾಗಿದೆ.

---

لَوۡ كَانَ عَرَضٗا قَرِيبٗا وَسَفَرٗا قَاصِدٗا لَّٱتَّبَعُوكَ وَلَٰكِنۢ بَعُدَتۡ عَلَيۡهِمُ ٱلشُّقَّةُۚ وَسَيَحۡلِفُونَ بِٱللَّهِ لَوِ ٱسۡتَطَعۡنَا لَخَرَجۡنَا مَعَكُمۡ يُهۡلِكُونَ أَنفُسَهُمۡ وَٱللَّهُ يَعۡلَمُ إِنَّهُمۡ لَكَٰذِبُونَ ﴿٤٢﴾

42. ಅದು ಸಮೀಪದ (ಸುಲಭದ) ಲಾಭವಾಗಿದ್ದರೆ ಮತ್ತು ನಿರಾಯಾಸ ಪ್ರಯಾಣವಾಗಿದ್ದರೆ ಅವರು (ಕಪಟವಿಶ್ವಾಸಿಗಳು) ನಿಮ್ಮನ್ನು ಹಿಂಬಾಲಿಸುತ್ತಿದ್ದರು. ಆದರೆ ಅವರಿಗೆ ಅದು ವಿದೂರ ಮತ್ತು ಆಯಾಸಕರವಾಗಿದೆ. "ನಮಗೆ ಸಾಮರ್ಥ್ಯವಿರುತ್ತಿದ್ದರೆ ನಾವು ನಿಮ್ಮೊಂದಿಗೆ ಹೊರಡುತ್ತಿದ್ದೆವು" ಎಂದು ಅವರು ಅಲ್ಲಾಹನ ಮೇಲೆ ಆಣೆ ಮಾಡಿ ಹೇಳುತ್ತಾರೆ. ಅವರು ಅವರನ್ನೇ ನಾಶ ಮಾಡುತ್ತಿದ್ದಾರೆ. ನಿಶ್ಚಯವಾಗಿಯೂ ಅವರು ಸುಳ್ಳು ಹೇಳುತ್ತಿದ್ದಾರೆಂದು ಅಲ್ಲಾಹನಿಗೆ ತಿಳಿದಿದೆ.[1]

---

عَفَا ٱللَّهُ عَنكَ لِمَ أَذِنتَ لَهُمۡ حَتَّىٰ يَتَبَيَّنَ لَكَ ٱلَّذِينَ صَدَقُواْ وَتَعۡلَمَ ٱلۡكَٰذِبِينَ ﴿٤٣﴾

43. (ಪ್ರವಾದಿಯವರೇ) ಅಲ್ಲಾಹು ನಿಮ್ಮನ್ನು ಕ್ಷಮಿಸಲಿ. ನೀವೇಕೆ ಅವರಿಗೆ ಅನುಮತಿ ನೀಡಿದಿರಿ? ಸತ್ಯ ಹೇಳುವವರು ಯಾರು ಮತ್ತು ಸುಳ್ಳು ಹೇಳುವವರು ಯಾರೆಂದು ಸ್ಪಷ್ಟವಾಗಿ ತಿಳಿಯುವವರೆಗೆ (ನೀವು ಅನುಮತಿ ನೀಡಬಾರದಿತ್ತು).

---

لَا يَسۡتَـٔۡذِنُكَ ٱلَّذِينَ يُؤۡمِنُونَ بِٱللَّهِ وَٱلۡيَوۡمِ ٱلۡأٓخِرِ أَن يُجَٰهِدُواْ بِأَمۡوَٰلِهِمۡ وَأَنفُسِهِمۡۗ وَٱللَّهُ عَلِيمُۢ بِٱلۡمُتَّقِينَ ﴿٤٤﴾

44. ಅಲ್ಲಾಹನಲ್ಲಿ ಮತ್ತು ಅಂತ್ಯದಿನದಲ್ಲಿ ವಿಶ್ವಾಸವಿಡುವವರು ತಮ್ಮ ತನು-ಧನಗಳಿಂದ (ಅಲ್ಲಾಹನ ಮಾರ್ಗದಲ್ಲಿ) ಯುದ್ಧ ಮಾಡದಿರಲು ನಿಮ್ಮೊಡನೆ ಅನುಮತಿ ಕೇಳುವುದಿಲ್ಲ. ದೇವಭಯವುಳ್ಳವರ ಬಗ್ಗೆ ಅಲ್ಲಾಹನಿಗೆ ಬಹಳ ಚೆನ್ನಾಗಿ ತಿಳಿದಿದೆ.

---

إِنَّمَا يَسۡتَـٔۡذِنُكَ ٱلَّذِينَ لَا يُؤۡمِنُونَ بِٱللَّهِ وَٱلۡيَوۡمِ ٱلۡأٓخِرِ وَٱرۡتَابَتۡ قُلُوبُهُمۡ فَهُمۡ فِي رَيۡبِهِمۡ يَتَرَدَّدُونَ ﴿٤٥﴾

45. ಅಲ್ಲಾಹನಲ್ಲಿ ಮತ್ತು ಅಂತ್ಯದಿನದಲ್ಲಿ ವಿಶ್ವಾಸವಿಡದವರು ಹಾಗೂ ಹೃದಯದಲ್ಲಿ ಸಂಶಯವಿರುವವರು ಮಾತ್ರ ನಿಮ್ಮೊಡನೆ ಅನುಮತಿ ಕೇಳುತ್ತಾರೆ. ಅವರು ಅವರ ಸಂಶಯದಲ್ಲಿಯೇ ಅಲೆದಾಡುತ್ತಿದ್ದಾರೆ.

---

وَلَوۡ أَرَادُواْ ٱلۡخُرُوجَ لَأَعَدُّواْ لَهُۥ عُدَّةٗ وَلَٰكِن كَرِهَ ٱللَّهُ ٱنۢبِعَاثَهُمۡ فَثَبَّطَهُمۡ وَقِيلَ ٱقۡعُدُواْ مَعَ ٱلۡقَٰعِدِينَ ﴿٤٦﴾

46. ಅವರಿಗೆ (ಯುದ್ಧಕ್ಕೆ) ಹೊರಡುವ ಇಚ್ಛೆಯಿದ್ದರೆ ಅವರು ಅದಕ್ಕೆ ಬೇಕಾದ ತಯಾರಿಯನ್ನು ಮಾಡುತ್ತಿದ್ದರು. ಆದರೆ ಅವರು ಅದಕ್ಕಾಗಿ ಎದ್ದೇಳುವುದನ್ನು ಅಲ್ಲಾಹು ಇಷ್ಟಪಡಲಿಲ್ಲ. ಆದ್ದರಿಂದ ಅವನು ಅವರನ್ನು ತಡೆದನು. ಕುಳಿತುಕೊಳ್ಳುವವರೊಡನೆ ನೀವೂ ಕುಳಿತುಕೊಳ್ಳಿರಿ ಎಂದು ಅವರೊಡನೆ ಹೇಳಲಾಯಿತು.

---

لَوۡ خَرَجُواْ فِيكُم مَّا زَادُوكُمۡ إِلَّا خَبَالٗا

47. ಅವರು ನಿಮ್ಮ ಜೊತೆಗೆ ಹೊರಡುತ್ತಿದ್ದರೆ ನಿಮಗೆ ಗೊಂದಲವಲ್ಲದೆ

---

ಸಂದರ್ಭಗಳಲ್ಲೂ ಯುದ್ಧಕ್ಕೆ ಹೊರಡಿರಿ.

[1] ಯುದ್ಧಕ್ಕೆ ಹೋಗದಿರಲು ವಿನಾಯಿತಿಯಿರುವವರ ಹೊರತು ಉಳಿದವರೆಲ್ಲರೂ ತಬೂಕ್ ಯುದ್ಧಕ್ಕೆ ಹೊರಡಬೇಕೆಂದು ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಆದೇಶ ಹೊರಡಿಸಿದಾಗ, ಕಪಟವಿಶ್ವಾಸಿಗಳು ಸುಳ್ಳು ನೆಪಗಳನ್ನು ಹೇಳಿ ಯುದ್ಧದಿಂದ ತಪ್ಪಿಸಿಕೊಂಡರು. ಇಲ್ಲಿಂದ ಮುಂದಕ್ಕೆ ಆ ಕಪಟವಿಶ್ವಾಸಿಗಳ ಬಗ್ಗೆ ವಿವರಿಸಲಾಗಿದೆ.

ಇನ್ನೇನೂ ಹೆಚ್ಚುವಂತೆ ಮಾಡುತ್ತಿರಲಿಲ್ಲ. ಅವರು ನಿಮ್ಮ ನಡುವೆ ಒಡಕು ಮೂಡಿಸಲು ಸಕ್ರಿಯವಾಗಿ ಓಡಾಡುತ್ತಿದ್ದರು. ಅವರ ಮಾತುಗಳನ್ನು ಕಿವಿಗೊಟ್ಟು ಕೇಳುವವರೂ ನಿಮ್ಮಲ್ಲಿದ್ದಾರೆ. ಅಕ್ರಮಿಗಳ ಬಗ್ಗೆ ಅಲ್ಲಾಹು ಬಹಳ ಚೆನ್ನಾಗಿ ತಿಳಿದಿದ್ದಾನೆ.

وَلَأَوۡضَعُواْ خِلَٰلَكُمۡ يَبۡغُونَكُمُ ٱلۡفِتۡنَةَ وَفِيكُمۡ سَمَّٰعُونَ لَهُمۡۗ وَٱللَّهُ عَلِيمُۢ بِٱلظَّٰلِمِينَ ﴿٤٧﴾

---

48. ಅವರು ಇದಕ್ಕೆ ಮೊದಲು ಕೂಡ ಒಡಕು ಮೂಡಿಸಲು ಹವಣಿಸಿದ್ದರು ಮತ್ತು ನಿಮ್ಮ ಮುಂದೆ ಕಾರ್ಯಗಳನ್ನು ತಲೆಕೆಳಗೆ ಮಾಡಿದ್ದರು. ಎಲ್ಲಿಯವರೆಗೆಂದರೆ, ಸತ್ಯವು ಬಂದು ಅಲ್ಲಾಹನ ಆಜ್ಞೆಯು ಪ್ರಕಟವಾಗುವ ತನಕ. ಅದು ಅವರಿಗೆ ಎಷ್ಟು ಅಪ್ರಿಯ-ವಾಗಿದ್ದರೂ ಸಹ.

لَقَدِ ٱبۡتَغَوُاْ ٱلۡفِتۡنَةَ مِن قَبۡلُ وَقَلَّبُواْ لَكَ ٱلۡأُمُورَ حَتَّىٰ جَآءَ ٱلۡحَقُّ وَظَهَرَ أَمۡرُ ٱللَّهِ وَهُمۡ كَٰرِهُونَ ﴿٤٨﴾

---

49. ಅವರಲ್ಲಿ, “ನನಗೆ (ಮನೆಯಲ್ಲಿರಲು) ಅನುಮತಿ ನೀಡಿರಿ. ನನ್ನನ್ನು ಪರೀಕ್ಷೆಗೆ ಸಿಲುಕಿಸಬೇಡಿ” ಎಂದು ಹೇಳುವವರಿದ್ದಾರೆ. ತಿಳಿಯಿರಿ! ಅವರು ಪರೀಕ್ಷೆಯಲ್ಲೇ ಬಿದ್ದಿದ್ದಾರೆ. ನಿಶ್ಚಯವಾಗಿಯೂ ನರಕಾಗ್ನಿಯು ಸತ್ಯನಿಷೇಧಿಗಳನ್ನು ಆವರಿಸಿಕೊಂಡಿದೆ.

وَمِنۡهُم مَّن يَقُولُ ٱئۡذَن لِّي وَلَا تَفۡتِنِّيٓۚ أَلَا فِي ٱلۡفِتۡنَةِ سَقَطُواْۗ وَإِنَّ جَهَنَّمَ لَمُحِيطَةُۢ بِٱلۡكَٰفِرِينَ ﴿٤٩﴾

---

50. ನಿಮಗೆ ಒಳಿತಾದರೆ ಅವರಿಗೆ ಸಂಕಟವಾಗುತ್ತದೆ. ನಿಮಗೆ ಕೆಡುಕು ಸಂಭವಿಸಿದರೆ ಅವರು ಹೇಳುತ್ತಾರೆ: “ನಾವು ಮೊದಲೇ ನಮ್ಮ ವಿಷಯದಲ್ಲಿ ಜಾಗರೂಕರಾಗಿದ್ದೆವು.” ನಂತರ ಅವರು ಸಂತೋಷಪಡುತ್ತಾ ಮರಳಿ ಹೋಗುತ್ತಾರೆ.

إِن تُصِبۡكَ حَسَنَةٞ تَسُؤۡهُمۡۖ وَإِن تُصِبۡكَ مُصِيبَةٞ يَقُولُواْ قَدۡ أَخَذۡنَآ أَمۡرَنَا مِن قَبۡلُ وَيَتَوَلَّواْ وَّهُمۡ فَرِحُونَ ﴿٥٠﴾

---

51. ಹೇಳಿರಿ: “ಅಲ್ಲಾಹು ನಮಗೆ ವಿಧಿಸಿದ್ದಲ್ಲದೆ ಬೇರೇನೂ ನಮಗೆ ಸಂಭವಿಸುವುದಿಲ್ಲ. ಅವನೇ ನಮ್ಮ ರಕ್ಷಕ.” ಸತ್ಯವಿಶ್ವಾಸಿಗಳು ಅಲ್ಲಾಹನಲ್ಲಿಯೇ ಭರವಸೆಯಿಡಲಿ.

قُل لَّن يُصِيبَنَآ إِلَّا مَا كَتَبَ ٱللَّهُ لَنَا هُوَ مَوۡلَىٰنَاۚ وَعَلَى ٱللَّهِ فَلۡيَتَوَكَّلِ ٱلۡمُؤۡمِنُونَ ﴿٥١﴾

---

52. ಹೇಳಿರಿ: “ನೀವು ನಮ್ಮ ವಿಷಯದಲ್ಲಿ ಇವೆರಡರಲ್ಲಿ (ಹುತಾತ್ಮರಾಗುವುದು ಅಥವಾ ವಿಜಯ ಪತಾಕೆಯೊಂದಿಗೆ ಮರಳುವುದು) ಒಂದರ ಹೊರತು ಬೇರೇನು ಕಾಯುತ್ತೀರಿ? ಆದರೆ ಅಲ್ಲಾಹು ನಿಮಗೆ ಅವನ ಕಡೆಯಿಂದ ಅಥವಾ ನಮ್ಮ ಕೈಗಳಿಂದ ಶಿಕ್ಷೆ ನೀಡಬೇಕೆಂದು ನಾವು ಕಾಯುತ್ತೇವೆ. ಆದ್ದರಿಂದ ನೀವು ಕಾಯಿರಿ. ನಿಶ್ಚಯವಾಗಿಯೂ ನಾವೂ ನಿಮ್ಮೊಂದಿಗೆ ಕಾಯುತ್ತೇವೆ.”

قُلۡ هَلۡ تَرَبَّصُونَ بِنَآ إِلَّآ إِحۡدَى ٱلۡحُسۡنَيَيۡنِۖ وَنَحۡنُ نَتَرَبَّصُ بِكُمۡ أَن يُصِيبَكُمُ ٱللَّهُ بِعَذَابٖ مِّنۡ عِندِهِۦٓ أَوۡ بِأَيۡدِينَاۖ فَتَرَبَّصُوٓاْ إِنَّا مَعَكُم مُّتَرَبِّصُونَ ﴿٥٢﴾

---

53. ಹೇಳಿರಿ: “ನೀವು (ಅಲ್ಲಾಹನ ಮಾರ್ಗದಲ್ಲಿ) ನಿಮ್ಮ ಇಚ್ಛೆಯಿಂದ ಅಥವಾ ನಿಮ್ಮ ಇಚ್ಛೆಗೆ ವಿರುದ್ಧವಾಗಿ ಖರ್ಚು ಮಾಡಿರಿ. (ನೀವು ಯಾವ ರೀತಿಯಲ್ಲಿ ಖರ್ಚು ಮಾಡಿದರೂ) ಅದು ನಿಮ್ಮಿಂದ ಸ್ವೀ-ಕಾರವಾಗುವುದಿಲ್ಲ. ನಿಶ್ಚಯವಾಗಿಯೂ ನೀವು ದುಷ್ಕರ್ಮಿಗಳಾದ

قُلۡ أَنفِقُواْ طَوۡعًا أَوۡ كَرۡهٗا لَّن يُتَقَبَّلَ مِنكُمۡ إِنَّكُمۡ كُنتُمۡ قَوۡمٗا فَٰسِقِينَ ﴿٥٣﴾

ಜನರಾಗಿದ್ದಿರಿ.”

---

54. (ಅಲ್ಲಾಹನ ಮಾರ್ಗದಲ್ಲಿ) ಅವರು ಮಾಡುವ ಖರ್ಚುಗಳು ಅವರಿಂದ ಸ್ವೀಕಾರವಾಗದಂತೆ ತಡೆಯಾಗಿರುವುದು ಅವರು ಅಲ್ಲಾಹು ಮತ್ತು ಅವನ ಸಂದೇಶವಾಹಕರನ್ನು ನಿಷೇಧಿಸಿರುವುದು, ಉದಾಸೀನವಾಗಿಯೇ ನಮಾಝ್ ಮಾಡಲು ಬರುವುದು ಮತ್ತು ಒಲ್ಲದ ಮನಸ್ಸಿನಿಂದ ಖರ್ಚು ಮಾಡುವುದು ಮುಂತಾದವುಗಳಲ್ಲದೆ ಇನ್ನೇನೂ ಅಲ್ಲ.

وَمَا مَنَعَهُمْ أَن تُقْبَلَ مِنْهُمْ نَفَقَٰتُهُمْ إِلَّآ
أَنَّهُمْ كَفَرُوا۟ بِٱللَّهِ وَبِرَسُولِهِۦ وَلَا يَأْتُونَ
ٱلصَّلَوٰةَ إِلَّا وَهُمْ كُسَالَىٰ وَلَا يُنفِقُونَ إِلَّا وَهُمْ
كَٰرِهُونَ ٥٤

---

55. ಅವರ ಆಸ್ತಿ ಮತ್ತು ಮಕ್ಕಳನ್ನು ನೋಡಿ ಬೆರಗಾಗಬೇಡಿ. ಅಲ್ಲಾಹು ಅವುಗಳ ಮೂಲಕ ಅವರನ್ನು ಇಹಲೋಕದಲ್ಲೇ ಶಿಕ್ಷಿಸಲು ಮತ್ತು ಸತ್ಯನಿಷೇಧಿಗಳಾಗಿಯೇ ಅವರು ಪ್ರಾಣ ಬಿಡುವಂತಾಗಲು ಬಯಸುತ್ತಾನೆ.

فَلَا تُعْجِبْكَ أَمْوَٰلُهُمْ وَلَآ أَوْلَٰدُهُمْ ۚ إِنَّمَا يُرِيدُ
ٱللَّهُ لِيُعَذِّبَهُم بِهَا فِى ٱلْحَيَوٰةِ ٱلدُّنْيَا وَتَزْهَقَ
أَنفُسُهُمْ وَهُمْ كَٰفِرُونَ ٥٥

---

56. ಅವರು ನಿಮ್ಮಲ್ಲಿ ಸೇರಿದವರು ಎಂದು (ಸಾಬೀತುಪಡಿಸಲು) ಅವರು ಅಲ್ಲಾಹನ ಹೆಸರಲ್ಲಿ ಆಣೆ ಮಾಡುತ್ತಾರೆ. ಆದರೆ ಅವರು ನಿಮ್ಮಲ್ಲಿ ಸೇರಿದವರಲ್ಲ. ಬದಲಿಗೆ ಅವರು ಅಂಜುಬುರುಕ ಜನರಾಗಿದ್ದಾರೆ.

وَيَحْلِفُونَ بِٱللَّهِ إِنَّهُمْ لَمِنكُمْ وَمَا هُم مِّنكُمْ
وَلَٰكِنَّهُمْ قَوْمٌ يَفْرَقُونَ ٥٦

---

57. ಅವರು (ಅಡಗಿಕೊಳ್ಳಲು) ಒಂದು ರಕ್ಷಣಾತಾಣವನ್ನು, ಗುಹೆಯನ್ನು ಅಥವಾ ನುಸುಳಿಕೊಳ್ಳಲು ಯಾವುದಾದರೂ ದ್ವಾರವನ್ನು ಕಂಡರೆ ಅದರ ಕಡೆಗೆ ದೌಡಾಯಿಸುತ್ತಾ ಓಡುತ್ತಾರೆ.

لَوْ يَجِدُونَ مَلْجَـًٔا أَوْ مَغَٰرَٰتٍ أَوْ مُدَّخَلًا لَّوَلَّوْا۟
إِلَيْهِ وَهُمْ يَجْمَحُونَ ٥٧

---

58. ದಾನಧರ್ಮಗಳನ್ನು ಹಂಚುವ ವಿಷಯದಲ್ಲಿ ನಿಮ್ಮನ್ನು ಟೀಕಿಸುವವರೂ ಅವರಲ್ಲಿದ್ದಾರೆ. ಅವರಿಗೆ ಅದರಿಂದ ಏನಾದರೂ ಕೊಟ್ಟುಬಿಟ್ಟರೆ ಸಂತೋಷವಾಗುತ್ತದೆ. ಅವರಿಗೆ ಏನೂ ಕೊಡದಿದ್ದರೆ ಅವರು ಸಿಟ್ಟಾಗುತ್ತಾರೆ.

وَمِنْهُم مَّن يَلْمِزُكَ فِى ٱلصَّدَقَٰتِ فَإِنْ أُعْطُوا۟
مِنْهَا رَضُوا۟ وَإِن لَّمْ يُعْطَوْا۟ مِنْهَآ إِذَا هُمْ
يَسْخَطُونَ ٥٨

---

59. ಅಲ್ಲಾಹು ಮತ್ತು ಅವನ ಸಂದೇಶವಾಹಕರು ಏನು ಕೊಟ್ಟರೋ ಅದರಲ್ಲಿ ಸಂತೃಪ್ತರಾಗಿ, “ನಮಗೆ ಅಲ್ಲಾಹು ಸಾಕು; ಅಲ್ಲಾಹು ಅವನ ಔದಾರ್ಯದಿಂದ ನಮಗೆ ಕೊಡುವನು ಮತ್ತು ಅವನ ಸಂದೇಶವಾಹಕರು ಕೂಡ ಕೊಡುವರು; ನಿಶ್ಚಯವಾಗಿಯೂ ನಾವು ಅಲ್ಲಾಹನಲ್ಲಿ ಮಾತ್ರ ನಿರೀಕ್ಷೆಯಿಡುತ್ತೇವೆ” ಎಂದು ಅವರು ಹೇಳುತ್ತಿದ್ದರೆ (ಎಷ್ಟು ಚೆನ್ನಾಗಿತ್ತು)!

وَلَوْ أَنَّهُمْ رَضُوا۟ مَآ ءَاتَىٰهُمُ ٱللَّهُ وَرَسُولُهُۥ
وَقَالُوا۟ حَسْبُنَا ٱللَّهُ سَيُؤْتِينَا ٱللَّهُ مِن فَضْلِهِۦ
وَرَسُولُهُۥٓ إِنَّآ إِلَى ٱللَّهِ رَٰغِبُونَ ٥٩

---

60. ದಾನಧರ್ಮವನ್ನು (ಝಕಾತ್) ಬಡವರಿಗೆ, ನಿರ್ಗತಿಕರಿಗೆ, ಅದರ ಸಂಗ್ರಹಕರಿಗೆ, ಹೃದಯದಲ್ಲಿ (ಇಸ್ಲಾಮ್ ಧರ್ಮದ ಬಗ್ಗೆ) ಒಲವುಳ್ಳವರಿಗೆ, ಗುಲಾಮ ವಿಮೋಚನೆಗೆ, ಸಾಲದಲ್ಲಿರುವವರಿಗೆ,

إِنَّمَا ٱلصَّدَقَٰتُ لِلْفُقَرَآءِ وَٱلْمَسَٰكِينِ وَٱلْعَٰمِلِينَ
عَلَيْهَا وَٱلْمُؤَلَّفَةِ قُلُوبُهُمْ وَفِى ٱلرِّقَابِ

ಅಲ್ಲಾಹನ ಮಾರ್ಗದಲ್ಲಿ ಹೋರಾಡುವುದಕ್ಕೆ ಮತ್ತು ಪ್ರಯಾಣಿಕರಿಗೆ ಮಾತ್ರ ನೀಡಬೇಕಾಗಿದೆ. ಇದು ಅಲ್ಲಾಹು ವಿಧಿಸಿದ ಕಡ್ಡಾಯ ಬಾಧ್ಯತೆಯಾಗಿದೆ. ಅಲ್ಲಾಹು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَٱلۡغَٰرِمِينَ وَفِي سَبِيلِ ٱللَّهِ وَٱبۡنِ ٱلسَّبِيلِۖ
فَرِيضَةٗ مِّنَ ٱللَّهِۗ وَٱللَّهُ عَلِيمٌ حَكِيمٞ ٦٠

---

61. ಪ್ರವಾದಿಗೆ ತೊಂದರೆ ಕೊಡುವವರು ಮತ್ತು ಅವರು (ಎಲ್ಲರ ಮಾತುಗಳನ್ನೂ ಕೇಳುವ) ಕಿವಿಯಾಗಿದ್ದಾರೆ ಎಂದು ಹೇಳುವವರು ಅವರಲ್ಲಿದ್ದಾರೆ. ಹೇಳಿರಿ: "ಅವರು ನಿಮಗೆ ಒಳಿತನ್ನೇ ಬಯಸುವ ಕಿವಿಯಾಗಿದ್ದಾರೆ. ಅವರು ಅಲ್ಲಾಹನಲ್ಲಿ ವಿಶ್ವಾಸವಿಡು-ತ್ತಾರೆ ಮತ್ತು ಸತ್ಯವಿಶ್ವಾಸಿಗಳ ಮಾತನ್ನು ನಂಬುತ್ತಾರೆ. ಅವರು ನಿಮ್ಮಲ್ಲಿರುವ ಸತ್ಯವಿಶ್ವಾಸಿಗಳಿಗೆ ದಯೆಯಾಗಿದ್ದಾರೆ." ಅಲ್ಲಾಹನ ಸಂದೇಶವಾಹಕರಿಗೆ ತೊಂದರೆ ಕೊಡುವವರು ಯಾರೋ ಅವರಿಗೆ ಯಾತನಾಮಯ ಶಿಕ್ಷೆಯಿದೆ.

وَمِنۡهُمُ ٱلَّذِينَ يُؤۡذُونَ ٱلنَّبِيَّ وَيَقُولُونَ هُوَ
أُذُنٞۚ قُلۡ أُذُنُ خَيۡرٖ لَّكُمۡ يُؤۡمِنُ بِٱللَّهِ
وَيُؤۡمِنُ لِلۡمُؤۡمِنِينَ وَرَحۡمَةٞ لِّلَّذِينَ ءَامَنُواْ
مِنكُمۡۚ وَٱلَّذِينَ يُؤۡذُونَ رَسُولَ ٱللَّهِ لَهُمۡ
عَذَابٌ أَلِيمٞ ٦١

---

62. ನಿಮ್ಮ ಸಂಪ್ರೀತಿಯನ್ನು ಪಡೆಯಲು ಅವರು ಅಲ್ಲಾಹನ ಮೇಲೆ ಆಣೆ ಮಾಡುತ್ತಾರೆ. ಆದರೆ ಅವರು ಸತ್ಯವಿಶ್ವಾಸಿಗಳಾಗಿದ್ದರೆ ಅಲ್ಲಾಹು ಮತ್ತು ಅವನ ಸಂದೇಶವಾಹಕರ ಸಂಪ್ರೀತಿಯನ್ನು ಪಡೆಯುವುದೇ ಅವರಿಗೆ ಹೆಚ್ಚು ಅರ್ಹವಾಗಿದೆ.

يَحۡلِفُونَ بِٱللَّهِ لَكُمۡ لِيُرۡضُوكُمۡ وَٱللَّهُ وَرَسُولُهُۥٓ
أَحَقُّ أَن يُرۡضُوهُ إِن كَانُواْ مُؤۡمِنِينَ ٦٢

---

63. ಯಾರು ಅಲ್ಲಾಹನಿಗೆ ಮತ್ತು ಅವನ ಸಂದೇಶವಾಹಕರಿಗೆ ವಿರುದ್ಧವಾಗಿ ಸಾಗುತ್ತಾನೋ ಅವನಿಗೆ ನರಕವೇ ಗತಿ ಮತ್ತು ಅವನು ಅದರಲ್ಲಿ ಶಾಶ್ವತವಾಗಿ ವಾಸಿಸುತ್ತಾನೆಂದು ಅವರಿಗೆ ತಿಳಿದಿಲ್ಲವೇ? ಅದೇ ಅತಿದೊಡ್ಡ ಅಪಮಾನ.

أَلَمۡ يَعۡلَمُوٓاْ أَنَّهُۥ مَن يُحَادِدِ ٱللَّهَ وَرَسُولَهُۥ
فَأَنَّ لَهُۥ نَارَ جَهَنَّمَ خَٰلِدٗا فِيهَاۚ ذَٰلِكَ ٱلۡخِزۡيُ
ٱلۡعَظِيمُ ٦٣

---

64. ಅವರ ಹೃದಯದಲ್ಲಿರುವ ದುರ್ವಿಚಾರಗಳನ್ನು ಬಹಿರಂಗಪಡಿಸುವ ಅಧ್ಯಾಯವು ಅವತೀರ್ಣವಾಗ-ಬಹುದೋ ಎಂದು ಕಪಟವಿಶ್ವಾಸಿಗಳು ಹೆದರುತ್ತಾರೆ. ಹೇಳಿರಿ: "ನೀವು ತಮಾಷೆ ಮಾಡುತ್ತಿರಿ. ನಿಶ್ಚಯವಾಗಿಯೂ ನೀವು ಹೆದರುವುದನ್ನು ಅಲ್ಲಾಹು ಬಹಿರಂಗಪಡಿಸುವನು."

يَحۡذَرُ ٱلۡمُنَٰفِقُونَ أَن تُنَزَّلَ عَلَيۡهِمۡ سُورَةٞ
تُنَبِّئُهُم بِمَا فِي قُلُوبِهِمۡۚ قُلِ ٱسۡتَهۡزِءُوٓاْ إِنَّ ٱللَّهَ
مُخۡرِجٞ مَّا تَحۡذَرُونَ ٦٤

---

65. ನೀವು ಅವರೊಂದಿಗೆ ಕೇಳಿದರೆ ಅವರು ಹೇಳುತ್ತಾರೆ: "ನಾವು ಕೇವಲ ಹರಟೆ ಹೊಡೆಯುತ್ತಾ ಆಟವಾಡುತ್ತಿದ್ದೆವು." ಕೇಳಿರಿ: "ಅಲ್ಲಾಹು, ಅವನ ವಚನಗಳು ಮತ್ತು ಅವನ ಸಂದೇಶವಾಹಕ-ರನ್ನು ನೀವು ತಮಾಷೆ ಮಾಡುತ್ತಿದ್ದಿರಾ?

وَلَئِن سَأَلۡتَهُمۡ لَيَقُولُنَّ إِنَّمَا كُنَّا نَخُوضُ
وَنَلۡعَبُۚ قُلۡ أَبِٱللَّهِ وَءَايَٰتِهِۦ وَرَسُولِهِۦ كُنتُمۡ
تَسۡتَهۡزِءُونَ ٦٥

---

66. ನೆಪಗಳನ್ನು ಹೇಳಬೇಡಿ. ಸತ್ಯವಿಶ್ವಾಸಿಗಳಾದ ಬಳಿಕ ನೀವು ಸತ್ಯನಿ-ಷೇಧಿಗಳಾಗಿದ್ದೀರಿ. ನಿಮ್ಮಲ್ಲಿ ಒಂದು ಗುಂಪನ್ನು ನಾವು ಕ್ಷಮಿಸಿದರೆ

لَا تَعۡتَذِرُواْ قَدۡ كَفَرۡتُم بَعۡدَ إِيمَٰنِكُمۡۚ إِن
نَّعۡفُ عَن طَآئِفَةٖ مِّنكُمۡ نُعَذِّبۡ طَآئِفَةَۢ

ಇನ್ನೊಂದು ಗುಂಪನ್ನು ಖಂಡಿತ ಶಿಕ್ಷಿಸುವೆವು. ಅದೇಕೆಂದರೆ ಅವರು ಅಪರಾಧಿಗಳಾಗಿದ್ದಾರೆ."[1]

بِأَنَّهُمۡ كَانُواْ مُجۡرِمِينَ ٦٦

---

67. ಕಪಟವಿಶ್ವಾಸಿ ಪುರುಷರು ಮತ್ತು ಕಪಟವಿಶ್ವಾಸಿ ಮಹಿಳೆಯರು ಒಂದೇ ವರ್ಗಕ್ಕೆ ಸೇರಿದವರು. ಅವರು ಕೆಡುಕನ್ನು ಆದೇಶಿಸುತ್ತಾರೆ ಮತ್ತು ಒಳಿತನ್ನು ವಿರೋಧಿಸುತ್ತಾರೆ, ಹಾಗೂ ತಮ್ಮ ಕೈಗಳನ್ನು ಮಡಚಿಕೊಳ್ಳುತ್ತಾರೆ.[2] ಅವರು ಅಲ್ಲಾಹನನ್ನು ಮರೆತಿದ್ದಾರೆ. ಆದ್ದರಿಂದ ಅಲ್ಲಾಹು ಕೂಡ ಅವರನ್ನು ಮರೆತಿದ್ದಾನೆ. ನಿಶ್ಚಯವಾಗಿಯೂ ಕಪಟವಿಶ್ವಾಸಿಗಳೇ ದುಷ್ಕರ್ಮಿಗಳು.

ٱلۡمُنَٰفِقُونَ وَٱلۡمُنَٰفِقَٰتُ بَعۡضُهُم مِّنۢ بَعۡضٖۚ
يَأۡمُرُونَ بِٱلۡمُنكَرِ وَيَنۡهَوۡنَ عَنِ ٱلۡمَعۡرُوفِ
وَيَقۡبِضُونَ أَيۡدِيَهُمۡۚ نَسُواْ ٱللَّهَ فَنَسِيَهُمۡۚ إِنَّ
ٱلۡمُنَٰفِقِينَ هُمُ ٱلۡفَٰسِقُونَ ٦٧

---

68. ಕಪಟವಿಶ್ವಾಸಿ ಪುರುಷರು ಮತ್ತು ಕಪಟವಿಶ್ವಾಸಿ ಮಹಿಳೆಯರಿಗೆ ಹಾಗೂ ಸತ್ಯನಿಷೇಧಿಗಳಿಗೆ ಅಲ್ಲಾಹು ನರಕಾಗ್ನಿಯ ಭರವಸೆ ನೀಡಿದ್ದಾನೆ. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುತ್ತಾರೆ. ಅವರಿಗೆ ಅದೇ ಸಾಕು. ಅವರು ಅಲ್ಲಾಹನ ಶಾಪಕ್ಕೆ ಗುರಿಯಾಗಿದ್ದಾರೆ. ಅವರಿಗೆ ಶಾಶ್ವತ ಶಿಕ್ಷೆಯಿದೆ.

وَعَدَ ٱللَّهُ ٱلۡمُنَٰفِقِينَ وَٱلۡمُنَٰفِقَٰتِ وَٱلۡكُفَّارَ نَارَ
جَهَنَّمَ خَٰلِدِينَ فِيهَاۚ هِيَ حَسۡبُهُمۡۚ وَلَعَنَهُمُ ٱللَّهُۖ
وَلَهُمۡ عَذَابٞ مُّقِيمٞ ٦٨

---

69. (ನಿಮ್ಮ ಸ್ಥಿತಿಯು) ನಿಮಗಿಂತ ಮೊದಲಿನ ಸತ್ಯನಿಷೇಧಿಗಳಂತೆ. ಅವರು ನಿಮಗಿಂತಲೂ ಹೆಚ್ಚು ಬಲಿಷ್ಠರಾಗಿದ್ದರು ಮತ್ತು ನಿಮಗಿಂತಲೂ ಹೆಚ್ಚು ಆಸ್ತಿ ಹಾಗೂ ಮಕ್ಕಳನ್ನು ಹೊಂದಿದ್ದರು. ಅವರು ಅವರ ಪಾಲನ್ನು ಪಡೆದು ಆನಂದಿಸಿದರು. ನಿಮಗಿಂತ ಮೊದಲಿನವರು ಅವರ ಪಾಲನ್ನು ಪಡೆದು ಆನಂದಿಸಿದಂತೆ ನೀವೂ ಸಹ ನಿಮ್ಮ ಪಾಲನ್ನು ಪಡೆದು ಆನಂದಿಸುತ್ತೀರಿ. ಅವರು ತಮಾಷೆಗಳಲ್ಲಿ ಕಾಲಹರಣ ಮಾಡಿದಂತೆ ನೀವು ಕೂಡ ತಮಾಷೆಗಳಲ್ಲಿ ಕಾಲಹರಣ ಮಾಡಿದ್ದೀರಿ. ಅಂತಹವರ ಕರ್ಮಗಳು ಇಹಲೋಕದಲ್ಲೂ, ಪರಲೋಕದಲ್ಲೂ ವ್ಯರ್ಥವಾಗಿವೆ. ಅವರೇ ನಷ್ಟಹೊಂದಿದವರು.

كَٱلَّذِينَ مِن قَبۡلِكُمۡ كَانُوٓاْ أَشَدَّ مِنكُمۡ قُوَّةٗ
وَأَكۡثَرَ أَمۡوَٰلٗا وَأَوۡلَٰدٗا فَٱسۡتَمۡتَعُواْ بِخَلَٰقِهِمۡ
فَٱسۡتَمۡتَعۡتُم بِخَلَٰقِكُمۡ كَمَا ٱسۡتَمۡتَعَ ٱلَّذِينَ مِن
قَبۡلِكُم بِخَلَٰقِهِمۡ وَخُضۡتُمۡ كَٱلَّذِي خَاضُوٓاْۚ
أُوْلَٰٓئِكَ حَبِطَتۡ أَعۡمَٰلُهُمۡ فِي ٱلدُّنۡيَا وَٱلۡأٓخِرَةِۖ
وَأُوْلَٰٓئِكَ هُمُ ٱلۡخَٰسِرُونَ ٦٩

---

70. ಅವರಿಗಿಂತ ಮೊದಲಿನವರ—ನೂಹರ ಜನರು, ಆದ್ ಗೋತ್ರ, ಸಮೂದ್ ಗೋತ್ರ, ಇಬ್ರಾಹೀಮರ ಜನರು, ಮದ್ಯನ್ ದೇಶದ ಜನರು, ಬುಡಮೇಲಾದ ದೇಶದ ಜನರು—ಮುಂತಾದವರ

أَلَمۡ يَأۡتِهِمۡ نَبَأُ ٱلَّذِينَ مِن قَبۡلِهِمۡ قَوۡمِ نُوحٖ
وَعَادٖ وَثَمُودَ وَقَوۡمِ إِبۡرَٰهِيمَ وَأَصۡحَٰبِ مَدۡيَنَ
وَٱلۡمُؤۡتَفِكَٰتِۚ أَتَتۡهُمۡ رُسُلُهُم بِٱلۡبَيِّنَٰتِۖ فَمَا

---

[1] ಕಪಟವಿಶ್ವಾಸಿಗಳು ಅಲ್ಲಾಹನನ್ನು, ಅವನ ವಚನಗಳನ್ನು ಮತ್ತು ಸಂದೇಶವಾಹಕರನ್ನು ತಮಾಷೆ ಮಾಡುತ್ತಿದ್ದರು. ಇದು ಸತ್ಯವಿಶ್ವಾಸಿಗಳ ಕಿವಿಗೆ ಬಿದ್ದು ನಂತರ ಪ್ರವಾದಿಯವರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ತಿಳಿದಾಗ ಅವರು ಕಪಟವಿಶ್ವಾಸಿಗಳನ್ನು ಕರೆದು ವಿಚಾರಿಸುತ್ತಿದ್ದರು. ಆಗ ಅವರು ಮೊದಮೊದಲು ನಿರಾಕರಿಸಿದರೂ, ಸಾಕ್ಷ್ಯವನ್ನು ತೋರಿಸಿದಾಗ ಅದನ್ನು ಒಪ್ಪಿಕೊಂಡು, "ನಾವು ಕೇವಲ ಕಾಲಹರಣ ಮಾಡಲು ತಮಾಷೆ ಹೇಳುತ್ತಿದ್ದೆವು" ಎಂದು ನೆಪ ಹೇಳಿ ನುಣುಚಿಕೊಳ್ಳುತ್ತಿದ್ದರು. ಅಲ್ಲಾಹು, ಕುರ್‌ಆನ್ ಮತ್ತು ಪ್ರವಾದಿಯವರನ್ನು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅವಹೇಳನ ಮಾಡುವುದು, ಅವರ ಬಗ್ಗೆ ತಿರಸ್ಕಾರದಿಂದ ಮಾತನಾಡುವುದು ಸತ್ಯನಿಷೇಧವೆಂದು ಈ ವಚನದಲ್ಲಿ ತಿಳಿಸಲಾಗಿದೆ.

[2] ಅಂದರೆ ಅಲ್ಲಾಹನ ಮಾರ್ಗದಲ್ಲಿ ಖರ್ಚು ಮಾಡಲು ಹಿಂಜರಿಯುತ್ತಾರೆ.

كَانَ ٱللَّهُ لِيَظْلِمَهُمْ وَلَـٰكِن كَانُوٓا۟ أَنفُسَهُمْ يَظْلِمُونَ ٧٠

ಸಮಾಚಾರಗಳು ಇವರಿಗೆ ತಲುಪಿಲ್ಲವೇ? ಅವರೆಲ್ಲರ ಬಳಿಗೆ ಅವರ ಪ್ರವಾದಿಗಳು ಸ್ಪಷ್ಟ ಸಾಕ್ಷ್ಯಾಧಾರಗಳೊಂದಿಗೆ ಬಂದಿದ್ದರು. ಅಲ್ಲಾಹು ಅವರಿಗೆ ಯಾವುದೇ ಅನ್ಯಾಯ ಮಾಡಿಲ್ಲ. ಆದರೆ ಅವರೇ ಅವರಿಗೆ ಅನ್ಯಾಯ ಮಾಡಿದರು.

---

وَٱلْمُؤْمِنُونَ وَٱلْمُؤْمِنَـٰتُ بَعْضُهُمْ أَوْلِيَآءُ بَعْضٍ ۚ يَأْمُرُونَ بِٱلْمَعْرُوفِ وَيَنْهَوْنَ عَنِ ٱلْمُنكَرِ وَيُقِيمُونَ ٱلصَّلَوٰةَ وَيُؤْتُونَ ٱلزَّكَوٰةَ وَيُطِيعُونَ ٱللَّهَ وَرَسُولَهُۥٓ ۚ أُو۟لَـٰٓئِكَ سَيَرْحَمُهُمُ ٱللَّهُ ۗ إِنَّ ٱللَّهَ عَزِيزٌ حَكِيمٌ ٧١

71. ಸತ್ಯವಿಶ್ವಾಸಿ ಪುರುಷರು ಮತ್ತು ಸತ್ಯವಿಶ್ವಾಸಿ ಮಹಿಳೆಯರು ಪರಸ್ಪರ ಆಪ್ತಮಿತ್ರರು. ಅವರು ಒಳಿತನ್ನು ಆದೇಶಿಸುತ್ತಾರೆ ಮತ್ತು ಕೆಡುಕನ್ನು ವಿರೋಧಿಸುತ್ತಾರೆ, ನಮಾಝ್ ಸಂಸ್ಥಾಪಿಸುತ್ತಾರೆ, ಝಕಾತ್ ನೀಡುತ್ತಾರೆ ಮತ್ತು ಅಲ್ಲಾಹು ಹಾಗೂ ಅವನ ಸಂದೇಶವಾಹಕರ ಆಜ್ಞಾಪಾಲನೆ ಮಾಡುತ್ತಾರೆ. ಅಲ್ಲಾಹು ಅವರಿಗೆ ಖಂಡಿತ ದಯೆ ತೋರುವನು. ನಿಶ್ಚಯವಾಗಿಯೂ ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

---

وَعَدَ ٱللَّهُ ٱلْمُؤْمِنِينَ وَٱلْمُؤْمِنَـٰتِ جَنَّـٰتٍ تَجْرِى مِن تَحْتِهَا ٱلْأَنْهَـٰرُ خَـٰلِدِينَ فِيهَا وَمَسَـٰكِنَ طَيِّبَةً فِى جَنَّـٰتِ عَدْنٍ ۚ وَرِضْوَٰنٌ مِّنَ ٱللَّهِ أَكْبَرُ ۚ ذَٰلِكَ هُوَ ٱلْفَوْزُ ٱلْعَظِيمُ ٧٢

72. ಅಲ್ಲಾಹು ಸತ್ಯವಿಶ್ವಾಸಿ ಪುರುಷರು ಮತ್ತು ಸತ್ಯವಿಶ್ವಾಸಿ ಮಹಿಳೆಯರಿಗೆ ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋ-ದ್ಯಾನಗಳ ಭರವಸೆ ನೀಡಿದ್ದಾನೆ. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುತ್ತಾರೆ. ಚಿರಸ್ಥಾಯಿಯಾದ ಉದ್ಯಾನಗಳಲ್ಲಿರುವ ಮನಮೋಹಕ ವಸತಿಗಳ ಭರವಸೆಯನ್ನೂ ನೀಡಿದ್ದಾನೆ. ಆದರೆ ಅಲ್ಲಾಹನ ಸಂಪ್ರೀತಿಯೇ ಎಲ್ಲಕ್ಕಿಂತಲೂ ದೊಡ್ಡದು. ಅದೇ ಅತಿದೊಡ್ಡ ಯಶಸ್ಸು.

---

يَـٰٓأَيُّهَا ٱلنَّبِىُّ جَـٰهِدِ ٱلْكُفَّارَ وَٱلْمُنَـٰفِقِينَ وَٱغْلُظْ عَلَيْهِمْ ۚ وَمَأْوَىٰهُمْ جَهَنَّمُ ۖ وَبِئْسَ ٱلْمَصِيرُ ٧٣

73. ಓ ಪ್ರವಾದಿಯವರೇ! ಸತ್ಯನಿಷೇಧಿಗಳ ಮತ್ತು ಕಪಟವಿಶ್ವಾಸಿಗಳ ವಿರುದ್ಧ ಹೋರಾಡಿರಿ. ಅವರ ವಿಷಯದಲ್ಲಿ ಕಟುವಾಗಿ ವರ್ತಿಸಿರಿ. ಅವರ ವಾಸಸ್ಥಳವು ನರಕವಾಗಿದೆ. ಆ ಗಮ್ಯಸ್ಥಾನವು ಬಹಳ ನಿಕೃಷ್ಟವಾಗಿದೆ.

---

يَحْلِفُونَ بِٱللَّهِ مَا قَالُوا۟ وَلَقَدْ قَالُوا۟ كَلِمَةَ ٱلْكُفْرِ وَكَفَرُوا۟ بَعْدَ إِسْلَـٰمِهِمْ وَهَمُّوا۟ بِمَا لَمْ يَنَالُوا۟ ۚ وَمَا نَقَمُوٓا۟ إِلَّآ أَنْ أَغْنَىٰهُمُ ٱللَّهُ وَرَسُولُهُۥ مِن فَضْلِهِۦ ۚ فَإِن يَتُوبُوا۟ يَكُ خَيْرًا لَّهُمْ ۖ وَإِن يَتَوَلَّوْا۟ يُعَذِّبْهُمُ ٱللَّهُ عَذَابًا أَلِيمًا فِى ٱلدُّنْيَا وَٱلْـَٔاخِرَةِ ۚ وَمَا لَهُمْ فِى ٱلْأَرْضِ مِن وَلِىٍّ وَلَا نَصِيرٍ ٧٤

74. ನಾವು (ಪ್ರವಾದಿಯ ವಿರುದ್ಧ ಏನೂ) ಹೇಳಿಲ್ಲವೆಂದು ಅವರು (ಕಪಟವಿಶ್ವಾಸಿಗಳು) ಅಲ್ಲಾಹನ ಮೇಲೆ ಆಣೆ ಮಾಡಿ ಹೇಳುತ್ತಾರೆ. ಆದರೆ (ವಾಸ್ತವದಲ್ಲಿ) ಅವರು ಸತ್ಯನಿಷೇಧದ ಮಾತನ್ನೇ ಹೇಳಿದ್ದಾರೆ. ಇಸ್ಲಾಮ್ ಸ್ವೀಕರಿಸಿದ ಬಳಿಕ ಅವರು ಸತ್ಯನಿಷೇಧಿ-ಗಳಾಗಿ ಮಾರ್ಪಟ್ಟಿದ್ದಾರೆ. ಅವರಿಗೆ ಮಾಡಲು ಸಾಧ್ಯವಾಗದ ಸಂಗತಿಗಾಗಿ (ಪ್ರವಾದಿಯ ಹತ್ಯೆಗಾಗಿ) ಅವರು ಹವಣಿಸಿದ್ದರು. ಅಲ್ಲಾಹು ಅವನ ಔದಾರ್ಯದಿಂದ ಅವರನ್ನು ಶ್ರೀಮಂತಗೊ-ಳಿಸಿದನು ಮತ್ತು ಅವನ ಸಂದೇಶವಾಹಕರು ಕೂಡ (ಅವರನ್ನು ಶ್ರೀಮಂತಗೊಳಿಸಿದರು) ಎಂಬುದಲ್ಲದೆ ಅವರ ಪ್ರತೀಕಾರಕ್ಕೆ ಬೇರೇನು ಕಾರಣವಿದೆ? ಅವರು ಪಶ್ಚಾತ್ತಾಪಪಟ್ಟು ಮರಳಿದರೆ

ಅದು ಅವರಿಗೇ ಒಳ್ಳೆಯದು. ಅವರು ಬೆನ್ನು ತೋರಿಸಿ ನಡೆದರೆ, ಅಲ್ಲಾಹು ಅವರಿಗೆ ಇಹಲೋಕದಲ್ಲೂ, ಪರಲೋಕದಲ್ಲೂ ಯಾತನಾಮಯ ಶಿಕ್ಷೆಯನ್ನು ನೀಡುವನು. ಭೂಮಿಯಲ್ಲಿ ಅವರಿಗೆ ಯಾವುದೇ ರಕ್ಷಕರು ಅಥವಾ ಸಹಾಯಕರು ಇರಲಾರರು.

---

75. "ಅಲ್ಲಾಹು ಅವನ ಔದಾರ್ಯದಿಂದ ನಮಗೆ ದೌಲತ್ತು ನೀಡಿದರೆ ನಿಶ್ಚಯವಾಗಿಯೂ ನಾವು ದಾನಧರ್ಮ ಮಾಡುತ್ತೇವೆ ಮತ್ತು ನೀತಿವಂತರಲ್ಲಿ ಸೇರಿಕೊಳ್ಳುತ್ತೇವೆ" ಎಂದು ಅಲ್ಲಾಹನೊಡನೆ ಕರಾರು ಮಾಡಿದವರು ಅವರಲ್ಲಿದ್ದಾರೆ.

وَمِنۡهُم مَّنۡ عَٰهَدَ ٱللَّهَ لَئِنۡ ءَاتَىٰنَا مِن فَضۡلِهِۦ لَنَصَّدَّقَنَّ وَلَنَكُونَنَّ مِنَ ٱلصَّٰلِحِينَ ٧٥

---

76. ಆದರೆ ಅವನು ಅವರಿಗೆ ಅವನ ಔದಾರ್ಯದಿಂದ ದೌಲತ್ತು ನೀಡಿದಾಗ ಅವರು ಜಿಪುಣತನ ತೋರಿದರು ಮತ್ತು ಕಡೆಗಣಿಸುತ್ತಾ ತಿರುಗಿ ನಡೆದರು.

فَلَمَّآ ءَاتَىٰهُم مِّن فَضۡلِهِۦ بَخِلُواْ بِهِۦ وَتَوَلَّواْ وَّهُم مُّعۡرِضُونَ ٧٦

---

77. ಆದ್ದರಿಂದ ಅವರಿಗೆ ಶಿಕ್ಷೆಯಾಗಿ ಅಲ್ಲಾಹು ಅವರ ಹೃದಯಗಳಲ್ಲಿ ಕಪಟತೆಯನ್ನು ಹಾಕಿದನು. ಅವರು ಅವನನ್ನು ಭೇಟಿಯಾಗುವ ದಿನದ ತನಕ (ಅದು ಅವರ ಹೃದಯಗಳಲ್ಲಿರುವುದು). ಅದೇಕೆಂದರೆ, ಅವರು ಅಲ್ಲಾಹನಿಗೆ ನೀಡಿದ ಭರವಸೆಯನ್ನು ಮುರಿದರು. ಅದೇಕೆಂದರೆ, ಅವರು ಸುಳ್ಳು ಹೇಳುವವರಾಗಿದ್ದರು.

فَأَعۡقَبَهُمۡ نِفَاقٗا فِي قُلُوبِهِمۡ إِلَىٰ يَوۡمِ يَلۡقَوۡنَهُۥ بِمَآ أَخۡلَفُواْ ٱللَّهَ مَا وَعَدُوهُ وَبِمَا كَانُواْ يَكۡذِبُونَ ٧٧

---

78. ಅವರ ರಹಸ್ಯಗಳನ್ನು ಮತ್ತು ಅವರ ಗೂಢ ಸಂಭಾಷಣೆಗಳನ್ನು ಅಲ್ಲಾಹು ತಿಳಿಯುತ್ತಾನೆಂದು, ಮತ್ತು ಅಲ್ಲಾಹು ಅಗೋಚರ ಸಂಗತಿಗಳನ್ನು ಬಹಳ ಚೆನ್ನಾಗಿ ತಿಳಿಯುತ್ತಾನೆಂದು ಅವರಿಗೆ ಗೊತ್ತಿಲ್ಲವೇ?

أَلَمۡ يَعۡلَمُوٓاْ أَنَّ ٱللَّهَ يَعۡلَمُ سِرَّهُمۡ وَنَجۡوَىٰهُمۡ وَأَنَّ ٱللَّهَ عَلَّٰمُ ٱلۡغُيُوبِ ٧٨

---

79. ಸ್ವಯಂಪ್ರೇರಣೆಯಿಂದ ದಾನ ಮಾಡುವ ಸತ್ಯವಿಶ್ವಾಸಿಗ-ಳನ್ನು ಮತ್ತು ದಾನ ಮಾಡಲು ತಮ್ಮ ದಿನಗೂಲಿಯ ಹೊರತು ಬೇರೇನೂ ಇಲ್ಲದವರನ್ನು ಅವರು ಟೀಕಿಸುತ್ತಾರೆ. ಅವರು ಅವರನ್ನು ತಮಾಷೆ ಮಾಡುತ್ತಾರೆ. ಅಲ್ಲಾಹು ಕೂಡ ಅವರನ್ನು (ಕಪಟವಿಶ್ವಾಸಿಗಳನ್ನು) ತಮಾಷೆ ಮಾಡುವನು. ಅವರಿಗೆ ಯಾತನಾಮಯ ಶಿಕ್ಷೆಯಿದೆ.

ٱلَّذِينَ يَلۡمِزُونَ ٱلۡمُطَّوِّعِينَ مِنَ ٱلۡمُؤۡمِنِينَ فِي ٱلصَّدَقَٰتِ وَٱلَّذِينَ لَا يَجِدُونَ إِلَّا جُهۡدَهُمۡ فَيَسۡخَرُونَ مِنۡهُمۡ سَخِرَ ٱللَّهُ مِنۡهُمۡ وَلَهُمۡ عَذَابٌ أَلِيمٌ ٧٩

---

80. ನೀವು ಅವರಿಗೋಸ್ಕರ (ಅಲ್ಲಾಹನಲ್ಲಿ) ಕ್ಷಮೆಯಾಚನೆ ಮಾಡಿದರೂ ಅಥವಾ ಕ್ಷಮೆಯಾಚನೆ ಮಾಡದಿದ್ದರೂ, ನೀವು ಅವರಿಗೋಸ್ಕರ ಎಪ್ಪತ್ತು ಸಲ ಕ್ಷಮೆಯಾಚನೆ ಮಾಡಿದರೂ ಅಲ್ಲಾಹು ಅವರನ್ನು ಕ್ಷಮಿಸುವುದಿಲ್ಲ. ಅದೇಕೆಂದರೆ

ٱسۡتَغۡفِرۡ لَهُمۡ أَوۡ لَا تَسۡتَغۡفِرۡ لَهُمۡ إِن تَسۡتَغۡفِرۡ لَهُمۡ سَبۡعِينَ مَرَّةٗ فَلَن يَغۡفِرَ ٱللَّهُ لَهُمۡۚ ذَٰلِكَ بِأَنَّهُمۡ كَفَرُواْ بِٱللَّهِ وَرَسُولِهِۦۗ وَٱللَّهُ لَا يَهۡدِي

ٱلۡقَوۡمَ ٱلۡفَٰسِقِينَ ٨٠

ಅವರು ಅಲ್ಲಾಹನನ್ನು ಮತ್ತು ಅವನ ಸಂದೇಶವಾಹಕ-ರನ್ನು ನಿಷೇಧಿಸಿದ್ದಾರೆ. ವಿಧೇಯತೆಯಿಲ್ಲದ ಜನರಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ.

---

81. فَرِحَ ٱلۡمُخَلَّفُونَ بِمَقۡعَدِهِمۡ خِلَٰفَ رَسُولِ ٱللَّهِ وَكَرِهُوٓاْ أَن يُجَٰهِدُواْ بِأَمۡوَٰلِهِمۡ وَأَنفُسِهِمۡ فِي سَبِيلِ ٱللَّهِ وَقَالُواْ لَا تَنفِرُواْ فِي ٱلۡحَرِّۗ قُلۡ نَارُ جَهَنَّمَ أَشَدُّ حَرّٗاۚ لَّوۡ كَانُواْ يَفۡقَهُونَ ٨١

(ಯುದ್ಧದಿಂದ ತಪ್ಪಿಸಿ) ಹಿಂದೆ ಉಳಿದವರು ಅಲ್ಲಾಹನ ಸಂದೇಶವಾಹಕರು ಯುದ್ಧಕ್ಕೆ ಹೊರಟ ನಂತರ ತಾವು ಹಿಂದೆ ಉಳಿದುದರ ಬಗ್ಗೆ ಸಂತೃಪ್ತರಾಗಿದ್ದಾರೆ. ಅವರು ತಮ್ಮ ತನು-ಧನಗಳಿಂದ ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡಲು ಇಷ್ಟಪಡಲಿಲ್ಲ. ಅವರು ಹೇಳಿದರು: “ಈ ಉರಿಬಿಸಿಲಿನಲ್ಲಿ ಯುದ್ಧಕ್ಕೆ ಹೋಗಬೇಡಿ.” ಹೇಳಿರಿ: “ನರಕದ ಬೆಂಕಿ ಅದಕ್ಕಿಂತಲೂ ತೀಕ್ಷ್ಣ ಉರಿಯನ್ನು ಹೊಂದಿದೆ.” ಅವರು ಅದನ್ನು ಅರ್ಥಮಾಡಿಕೊಳ್ಳುತ್ತಿದ್ದರೆ!

---

82. فَلۡيَضۡحَكُواْ قَلِيلٗا وَلۡيَبۡكُواْ كَثِيرٗا جَزَآءَۢ بِمَا كَانُواْ يَكۡسِبُونَ ٨٢

ಆದ್ದರಿಂದ ಅವರು ಮಾಡಿಟ್ಟ ದುಷ್ಕರ್ಮಗಳ ಫಲವಾಗಿ ಅವರು ಕನಿಷ್ಠ ನಗುತ್ತಿರಲಿ ಮತ್ತು ಗರಿಷ್ಠ ಅಳುತ್ತಿರಲಿ.

---

83. فَإِن رَّجَعَكَ ٱللَّهُ إِلَىٰ طَآئِفَةٖ مِّنۡهُمۡ فَٱسۡتَـٔۡذَنُوكَ لِلۡخُرُوجِ فَقُل لَّن تَخۡرُجُواْ مَعِيَ أَبَدٗا وَلَن تُقَٰتِلُواْ مَعِيَ عَدُوًّاۖ إِنَّكُمۡ رَضِيتُم بِٱلۡقُعُودِ أَوَّلَ مَرَّةٖ فَٱقۡعُدُواْ مَعَ ٱلۡخَٰلِفِينَ ٨٣

(ಯುದ್ಧಾನಂತರ) ಅಲ್ಲಾಹು ನಿಮ್ಮನ್ನು (ಸುರಕ್ಷಿತವಾಗಿ) ಅವರಲ್ಲಿನ ಒಂದು ಗುಂಪಿನ ಬಳಿಗೆ ಹಿಂದಿರುಗಿಸಿದರೆ, ಇನ್ನೊಂದು ಯುದ್ಧಕ್ಕೆ ಬರುತ್ತೇವೆಂದು ಅವರು ನಿಮ್ಮಲ್ಲಿ ಅನುಮತಿ ಕೇಳುತ್ತಾರೆ. ಹೇಳಿರಿ: “ನೀವು ಯಾವತ್ತೂ ನನ್ನ ಜೊತೆಗೆ ಬರುವಂತಿಲ್ಲ. ನೀವು ಯಾವತ್ತೂ ನನ್ನ ಜೊತೆಗೂಡಿ ವೈರಿಗಳೊಡನೆ ಯುದ್ಧ ಮಾಡುವಂತಿಲ್ಲ. ನಿಶ್ಚಯವಾಗಿಯೂ ಮೊದಲ ಸಂದರ್ಭದಲ್ಲಿ ನೀವು (ಯುದ್ಧಕ್ಕೆ ಹೋಗದೆ) ಹಿಂದೆ ಉಳಿಯಲು ಇಷ್ಟಪಟ್ಟಿರಿ. ಆದ್ದರಿಂದ ನೀವು ಹಿಂದೆ ಉಳಿದವರೊಂದಿಗೇ ಇದ್ದುಕೊಳ್ಳಿ.”

---

84. وَلَا تُصَلِّ عَلَىٰٓ أَحَدٖ مِّنۡهُم مَّاتَ أَبَدٗا وَلَا تَقُمۡ عَلَىٰ قَبۡرِهِۦٓۖ إِنَّهُمۡ كَفَرُواْ بِٱللَّهِ وَرَسُولِهِۦ وَمَاتُواْ وَهُمۡ فَٰسِقُونَ ٨٤

ಅವರಲ್ಲಿ ಯಾರಾದರೂ ಇಹಲೋಕ ತ್ಯಜಿಸಿದರೆ ಅವನಿಗೆ ಅಂತ್ಯಕ್ರಿಯೆಯ ನಮಾಝ್ ಮಾಡಬೇಡಿ. ಅವನ ಸಮಾಧಿಯ ಬಳಿ ನಿಲ್ಲಬೇಡಿ. ನಿಶ್ಚಯವಾಗಿಯೂ ಅವರು ಅಲ್ಲಾಹನನ್ನು ಮತ್ತು ಅವನ ಸಂದೇಶವಾಹಕರನ್ನು ನಿಷೇಧಿಸಿದ್ದಾರೆ ಮತ್ತು ಅವಿಧೇಯರಾಗಿಯೇ ಪ್ರಾಣಬಿಟ್ಟಿದ್ದಾರೆ.

---

85. وَلَا تُعۡجِبۡكَ أَمۡوَٰلُهُمۡ وَأَوۡلَٰدُهُمۡۚ إِنَّمَا يُرِيدُ ٱللَّهُ أَن يُعَذِّبَهُم بِهَا فِي ٱلدُّنۡيَا وَتَزۡهَقَ أَنفُسُهُمۡ وَهُمۡ كَٰفِرُونَ ٨٥

ಅವರ ಆಸ್ತಿ ಮತ್ತು ಮಕ್ಕಳನ್ನು ನೋಡಿ ಬೆರಗಾಗಬೇಡಿ. ಅಲ್ಲಾಹು ಅವುಗಳ ಮೂಲಕ ಅವರನ್ನು ಇಹಲೋಕದಲ್ಲೇ ಶಿಕ್ಷಿಸಲು ಮತ್ತು ಸತ್ಯನಿಷೇಧಿಗಳಾಗಿಯೇ ಅವರು ಪ್ರಾಣಬಿಡುವಂತಾಗಲು ಬಯಸುತ್ತಾನೆ.

86. “ಅಲ್ಲಾಹನಲ್ಲಿ ವಿಶ್ವಾಸವಿಡಿ ಮತ್ತು ಅವನ ಸಂದೇಶವಾಹಕರ ಜೊತೆಗೂಡಿ ಯುದ್ಧ ಮಾಡಿ” ಎಂಬ ಆಜ್ಞೆಯಿರುವ ಒಂದು ಅಧ್ಯಾಯವು ಅವತೀರ್ಣವಾದರೆ, ಅವರಲ್ಲಿನ ಧನಿಕರ ಒಂದು ಗುಂಪು ನಿಮ್ಮ ಬಳಿಗೆ ಬಂದು, “ದಯವಿಟ್ಟು ನಮ್ಮನ್ನು ಬಿಟ್ಟುಬಿಡಿ; ನಾವು (ನಮ್ಮ ಮನೆಯಲ್ಲೇ) ಉಳಿಯುತ್ತೇವೆ” ಎಂದು ಹೇಳುತ್ತಾ ನಿಮ್ಮಲ್ಲಿ (ಯುದ್ಧದಿಂದ ತಪ್ಪಿಸಿಕೊಳ್ಳಲು) ಅನುಮತಿ ಕೇಳಿದರು.

وَإِذَآ أُنزِلَتۡ سُورَةٌ أَنۡ ءَامِنُواْ بِٱللَّهِ وَجَٰهِدُواْ
مَعَ رَسُولِهِ ٱسۡتَـٔۡذَنَكَ أُوْلُواْ ٱلطَّوۡلِ مِنۡهُمۡ وَقَالُواْ
ذَرۡنَا نَكُن مَّعَ ٱلۡقَٰعِدِينَ ٨٦

87. (ಯುದ್ಧದಿಂದ ವಿನಾಯಿತಿ ನೀಡಲಾದ) ಮಹಿಳೆಯರೊಡನೆ ಉಳಿದುಕೊಳ್ಳಲು ಅವರು ಇಷ್ಟಪಟ್ಟರು. ಅವರ ಹೃದಯಗಳಿಗೆ ಮೊಹರು ಹಾಕಲಾಗಿದೆ. ಆದ್ದರಿಂದ ಅವರು ಅರ್ಥಮಾಡಿಕೊಳ್ಳುವುದಿಲ್ಲ.

رَضُواْ بِأَن يَكُونُواْ مَعَ ٱلۡخَوَالِفِ وَطُبِعَ عَلَىٰ
قُلُوبِهِمۡ فَهُمۡ لَا يَفۡقَهُونَ ٨٧

88. ಆದರೆ ಸಂದೇಶವಾಹಕರು ಮತ್ತು ಅವರ ಜೊತೆಯಲ್ಲಿದ್ದ ಸತ್ಯವಿ-ಶ್ವಾಸಿಗಳು ತಮ್ಮ ತನು-ಧನಗಳಿಂದ ಯುದ್ಧ ಮಾಡಿದರು. ಅವರೇ ಒಳಿತನ್ನು ಹೊಂದಿರುವವರು. ಅವರೇ ಯಶಸ್ವಿಯಾದವರು.

لَٰكِنِ ٱلرَّسُولُ وَٱلَّذِينَ ءَامَنُواْ مَعَهُۥ جَٰهَدُواْ
بِأَمۡوَٰلِهِمۡ وَأَنفُسِهِمۡۚ وَأُوْلَٰٓئِكَ لَهُمُ ٱلۡخَيۡرَٰتُۖ
وَأُوْلَٰٓئِكَ هُمُ ٱلۡمُفۡلِحُونَ ٨٨

89. ಅಲ್ಲಾಹು ಅವರಿಗೆ ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳನ್ನು ಸಿದ್ಧಗೊಳಿಸಿದ್ದಾನೆ. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುತ್ತಾರೆ. ಅದೇ ಅತಿದೊಡ್ಡ ವಿಜಯ.

أَعَدَّ ٱللَّهُ لَهُمۡ جَنَّٰتٖ تَجۡرِي مِن تَحۡتِهَا ٱلۡأَنۡهَٰرُ
خَٰلِدِينَ فِيهَاۚ ذَٰلِكَ ٱلۡفَوۡزُ ٱلۡعَظِيمُ ٨٩

90. ಮರುಭೂಮಿ ನಿವಾಸಿಗಳಾದ ಅರಬ್ಬಿಗಳಲ್ಲಿ (ಯುದ್ಧಕ್ಕೆ ತೆರಳದಿರಲು) ವಿನಾಯಿತಿ ಹೊಂದಿರುವವರು ಅವರಿಗೆ ಅನುಮತಿ ಸಿಗುವುದಕ್ಕಾಗಿ ನಿಮ್ಮ ಬಳಿಗೆ ಬಂದರು. ಆದರೆ ಅಲ್ಲಾಹು ಮತ್ತು ಅವನ ಸಂದೇಶವಾಹಕರೊಡನೆ ಸುಳ್ಳು ಹೇಳಿದವರು (ಮನೆಯಲ್ಲೇ) ಕುಳಿತರು. ಅವರಲ್ಲಿರುವ ಸತ್ಯನಿಷೇ-ಧಿಗಳಿಗೆ ಯಾತನಾಮಯ ಶಿಕ್ಷೆಯು ಕಾದಿದೆ.

وَجَآءَ ٱلۡمُعَذِّرُونَ مِنَ ٱلۡأَعۡرَابِ لِيُؤۡذَنَ لَهُمۡ
وَقَعَدَ ٱلَّذِينَ كَذَبُواْ ٱللَّهَ وَرَسُولَهُۥۚ سَيُصِيبُ
ٱلَّذِينَ كَفَرُواْ مِنۡهُمۡ عَذَابٌ أَلِيمٞ ٩٠

91. (ಯುದ್ಧದಲ್ಲಿ ಪಾಲ್ಗೊಳ್ಳದ) ದುರ್ಬಲರ ಮೇಲೆ, ರೋಗಿಗಳ ಮೇಲೆ ಮತ್ತು ಖರ್ಚು ಮಾಡಲು ಏನೂ ಇಲ್ಲದವರ ಮೇಲೆ ದೋಷವಿಲ್ಲ—ಅವರು ಅಲ್ಲಾಹು ಮತ್ತು ಅವನ ಸಂದೇಶವಾಹಕರ ಹಿತಚಿಂತಕರಾಗಿದ್ದರೆ. ಇಂತಹ ಸಜ್ಜನರ ಮೇಲೆ ಆರೋಪ ಹೊರಿಸಲು ಯಾವುದೇ ಅವಕಾಶವಿಲ್ಲ. ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

لَّيۡسَ عَلَى ٱلضُّعَفَآءِ وَلَا عَلَى ٱلۡمَرۡضَىٰ وَلَا عَلَى
ٱلَّذِينَ لَا يَجِدُونَ مَا يُنفِقُونَ حَرَجٌ إِذَا نَصَحُواْ
لِلَّهِ وَرَسُولِهِۦۚ مَا عَلَى ٱلۡمُحۡسِنِينَ مِن سَبِيلٖۚ
وَٱللَّهُ غَفُورٞ رَّحِيمٞ ٩١

92. ಅವರು ನಿಮ್ಮ ಬಳಿಗೆ ಬಂದು, ಅವರನ್ನು ಕೂಡ ಯುದ್ಧಕ್ಕೆ ಒಯ್ಯಬೇಕೆಂದು ವಿನಂತಿಸಿದಾಗ, “ನಿಮ್ಮನ್ನು ಒಯ್ಯುವಂತಹ

وَلَا عَلَى ٱلَّذِينَ إِذَا مَآ أَتَوۡكَ لِتَحۡمِلَهُمۡ قُلۡتَ لَآ
أَجِدُ مَآ أَحۡمِلُكُمۡ عَلَيۡهِ تَوَلَّواْ وَّأَعۡيُنُهُمۡ تَفِيضُ

ಯಾವುದೇ ಸವಾರಿ ನನ್ನ ಬಳಿಯಿಲ್ಲ” ಎಂದು ನೀವು ಉತ್ತರಿಸಿದಿರಿ; ಆಗ (ಅಲ್ಲಾಹನ ಮಾರ್ಗದಲ್ಲಿ) ಖರ್ಚು ಮಾಡಲು ಚಿಕ್ಕಾಸು ಕೂಡ ಇಲ್ಲದೆ ಬೇಸರದಿಂದ ಕಣ್ಣೀರು ಸುರಿಸುತ್ತಾ ಹಿಂದಿರುಗಿ ಹೋದವರ ಮೇಲೂ ದೋಷವಿಲ್ಲ.

مِنَ ٱلدَّمۡعِ حَزَنًا أَلَّا يَجِدُواْ مَا يُنفِقُونَ ٩٢

---

93. ಆರೋಪ ಹೊರಿಸಲು ಅವಕಾಶವಿರುವುದು ಧನಿಕರಾಗಿದ್ದೂ ಸಹ (ಯುದ್ಧದಿಂದ ವಿನಾಯಿತಿ ಪಡೆಯಲು) ನಿಮ್ಮಲ್ಲಿ ಅನುಮತಿ ಕೇಳುವವರ ಮೇಲೆ ಮಾತ್ರ. ಅವರು (ಯುದ್ಧದಿಂದ ವಿನಾಯಿತಿ ನೀಡಲಾದ) ಮಹಿಳೆಯರೊಡನೆ ಕುಳಿತುಕೊಳ್ಳಲು ಇಷ್ಟಪಟ್ಟರು. ಅಲ್ಲಾಹು ಅವರ ಹೃದಯಗಳಿಗೆ ಮೊಹರು ಹಾಕಿದ್ದಾನೆ. ಆದ್ದರಿಂದ ಅವರು ತಿಳಿಯುವುದಿಲ್ಲ.

إِنَّمَا ٱلسَّبِيلُ عَلَى ٱلَّذِينَ يَسۡتَـٔۡذِنُونَكَ وَهُمۡ
أَغۡنِيَآءُۚ رَضُواْ بِأَن يَكُونُواْ مَعَ ٱلۡخَوَالِفِ
وَطَبَعَ ٱللَّهُ عَلَىٰ قُلُوبِهِمۡ فَهُمۡ لَا يَعۡلَمُونَ ٩٣

---

94. ನೀವು (ಯುದ್ಧದಿಂದ) ಮರಳಿ ಅವರ ಬಳಿಗೆ ಹೋದಾಗ, ಅವರು ನಿಮ್ಮ ಮುಂದೆ ನೆಪಗಳನ್ನು ಹೇಳುತ್ತಾರೆ. ಹೇಳಿರಿ: “ನೀವು ನೆಪಗಳನ್ನು ಹೇಳಬೇಡಿ. ನಾವು ನಿಮ್ಮನ್ನು ಎಂದಿಗೂ ನಂಬುವುದಿಲ್ಲ. ನಿಮ್ಮ ಕೆಲವು ಸಮಾಚಾರಗಳನ್ನು ಅಲ್ಲಾಹು ನಮಗೆ ತಿಳಿಸಿದ್ದಾನೆ. ಅಲ್ಲಾಹು ಮತ್ತು ಅವನ ಸಂದೇಶವಾಹಕರು ನೀವು ಮಾಡುವ ಕೆಲಸವನ್ನು ನೋಡುತ್ತಾರೆ. ನಂತರ ನಿಮ್ಮನ್ನು ದೃಶ್ಯ-ಅದೃಶ್ಯಗಳನ್ನು ತಿಳಿದವನ (ಅಲ್ಲಾಹನ) ಬಳಿಗೆ ಮರಳಿಸಲಾಗುವುದು. ಆಗ ನೀವು ಮಾಡುತ್ತಿದ್ದ ಕರ್ಮಗಳ ಬಗ್ಗೆ ಅವನು ನಿಮಗೆ ವಿವರಿಸಿಕೊಡುವನು.”

يَعۡتَذِرُونَ إِلَيۡكُمۡ إِذَا رَجَعۡتُمۡ إِلَيۡهِمۡۚ قُل لَّا
تَعۡتَذِرُواْ لَن نُّؤۡمِنَ لَكُمۡ قَدۡ نَبَّأَنَا ٱللَّهُ مِنۡ
أَخۡبَارِكُمۡۚ وَسَيَرَى ٱللَّهُ عَمَلَكُمۡ وَرَسُولُهُۥ ثُمَّ
تُرَدُّونَ إِلَىٰ عَٰلِمِ ٱلۡغَيۡبِ وَٱلشَّهَٰدَةِ فَيُنَبِّئُكُم
بِمَا كُنتُمۡ تَعۡمَلُونَ ٩٤

---

95. ನೀವು ಅವರ ಬಳಿಗೆ ಮರಳಿದಾಗ, ಅವರನ್ನು ಅವರ ಪಾಡಿಗೆ ಬಿಟ್ಟುಬಿಡುವುದಕ್ಕಾಗಿ ಅವರು ನಿಮ್ಮ ಮುಂದೆ ಅಲ್ಲಾಹನ ಹೆಸರಲ್ಲಿ ಆಣೆ ಮಾಡುತ್ತಾರೆ. ನೀವು ಅವರನ್ನು ಅವರ ಪಾಡಿಗೆ ಬಿಟ್ಟುಬಿಡಿ. ನಿಜವಾಗಿಯೂ ಅವರು ಹೊಲಸು ಜನರು. ಅವರ ವಾಸಸ್ಥಳ ನರಕವಾಗಿದೆ. ಅದು ಅವರು ಮಾಡಿದ ದುಷ್ಕರ್ಮಗಳ ಫಲವಾಗಿದೆ.

سَيَحۡلِفُونَ بِٱللَّهِ لَكُمۡ إِذَا ٱنقَلَبۡتُمۡ إِلَيۡهِمۡ
لِتُعۡرِضُواْ عَنۡهُمۡۖ فَأَعۡرِضُواْ عَنۡهُمۡۖ إِنَّهُمۡ رِجۡسٞۖ
وَمَأۡوَىٰهُمۡ جَهَنَّمُ جَزَآءَۢ بِمَا كَانُواْ يَكۡسِبُونَ ٩٥

---

96. ನಿಮ್ಮ ಸಂಪ್ರೀತಿಯನ್ನು ಪಡೆಯಲು ಅವರು ಅಲ್ಲಾಹನ ಮೇಲೆ ಆಣೆ ಮಾಡುತ್ತಾರೆ. ನೀವು ಅವರ ಬಗ್ಗೆ ಸಂಪ್ರೀತರಾದರೂ, ಅಲ್ಲಾಹು ಆ ದುಷ್ಕರ್ಮಿಗಳ ಬಗ್ಗೆ ಖಂಡಿತ ಸಂಪ್ರೀತನಾಗುವುದಿಲ್ಲ.

يَحۡلِفُونَ لَكُمۡ لِتَرۡضَوۡاْ عَنۡهُمۡۖ فَإِن تَرۡضَوۡاْ
عَنۡهُمۡ فَإِنَّ ٱللَّهَ لَا يَرۡضَىٰ عَنِ ٱلۡقَوۡمِ
ٱلۡفَٰسِقِينَ ٩٦

---

97. ಮರುಭೂಮಿ ನಿವಾಸಿಗಳಾದ ಅರಬ್ಬಿಗಳು ಕಡು ನಿಷೇಧ ಮತ್ತು ಕಪಟತೆಯಿರುವ ಜನರಾಗಿದ್ದಾರೆ. ಅಲ್ಲಾಹು ಅವನ ಸಂದೇಶವಾಹಕರಿಗೆ ಅವತೀರ್ಣಗೊಳಿಸಿದ ನಿಯಮಗಳ ಬಗ್ಗೆ

ٱلۡأَعۡرَابُ أَشَدُّ كُفۡرٗا وَنِفَاقٗا وَأَجۡدَرُ أَلَّا
يَعۡلَمُواْ حُدُودَ مَآ أَنزَلَ ٱللَّهُ عَلَىٰ رَسُولِهِۦۗ وَٱللَّهُ

عَلِيمٌ حَكِيمٌ ﴿٩٧﴾

ಅಜ್ಞರಾಗಿರಲು ಅವರು ಹೆಚ್ಚು ಅರ್ಹರಾಗಿದ್ದಾರೆ. ಅಲ್ಲಾಹು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ.

---

وَمِنَ ٱلْأَعْرَابِ مَن يَتَّخِذُ مَا يُنفِقُ مَغْرَمًا وَيَتَرَبَّصُ بِكُمُ ٱلدَّوَآئِرَ ۚ عَلَيْهِمْ دَآئِرَةُ ٱلسَّوْءِ ۗ وَٱللَّهُ سَمِيعٌ عَلِيمٌ ﴿٩٨﴾

98. (ಅಲ್ಲಾಹನ ಮಾರ್ಗದಲ್ಲಿ) ಖರ್ಚು ಮಾಡಿದ್ದನ್ನು ದಂಡವೆಂದು ಪರಿಗಣಿಸುವವರು ಮತ್ತು ನಿಮಗೆ ಕೆಟ್ಟ ಕಾಲಚಕ್ರಗಳು ಬರುವುದನ್ನು ಕಾಯುವವರು ಮರುಭೂಮಿ ನಿವಾಸಿಗಳಾದ ಅರಬ್ಬಿಗಳಲ್ಲಿದ್ದಾರೆ. ಕೆಟ್ಟ ಕಾಲಚಕ್ರಗಳು ಅವರಿಗೇ ಬರಲಿ! ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

---

وَمِنَ ٱلْأَعْرَابِ مَن يُؤْمِنُ بِٱللَّهِ وَٱلْيَوْمِ ٱلْءَاخِرِ وَيَتَّخِذُ مَا يُنفِقُ قُرُبَٰتٍ عِندَ ٱللَّهِ وَصَلَوَٰتِ ٱلرَّسُولِ ۚ أَلَآ إِنَّهَا قُرْبَةٌ لَّهُمْ ۚ سَيُدْخِلُهُمُ ٱللَّهُ فِى رَحْمَتِهِۦٓ ۗ إِنَّ ٱللَّهَ غَفُورٌ رَّحِيمٌ ﴿٩٩﴾

99. ಅಲ್ಲಾಹನಲ್ಲಿ ಮತ್ತು ಅಂತ್ಯದಿನದಲ್ಲಿ ವಿಶ್ವಾಸವಿಡುವವರು ಮತ್ತು (ಅಲ್ಲಾಹನ ಮಾರ್ಗದಲ್ಲಿ) ಖರ್ಚು ಮಾಡಿದ್ದನ್ನು ಅಲ್ಲಾಹನ ಸಾಮೀಪ್ಯ ಪಡೆಯುವ ಮತ್ತು ಸಂದೇಶವಾಹಕರ ಪ್ರಾರ್ಥನೆಗಳಲ್ಲಿ ಒಳಪಡುವ ಮಾರ್ಗವೆಂದು ಪರಿಗಣಿಸುವವರೂ ಕೂಡ ಆ ಮರುಭೂಮಿ ನಿವಾಸಿಗಳಾದ ಅರಬ್ಬಿಗಳಲ್ಲಿದ್ದಾರೆ. ತಿಳಿಯಿರಿ! ನಿಶ್ಚಯವಾಗಿಯೂ ಅದು ಅವರಿಗೆ ಸಾಮೀಪ್ಯ ಪಡೆಯುವ ಮಾರ್ಗವಾಗಿದೆ. ಅಲ್ಲಾಹು ಅವರನ್ನು ತನ್ನ ಕರುಣೆಯಲ್ಲಿ ಸೇರಿಸುವನು. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

---

وَٱلسَّٰبِقُونَ ٱلْأَوَّلُونَ مِنَ ٱلْمُهَٰجِرِينَ وَٱلْأَنصَارِ وَٱلَّذِينَ ٱتَّبَعُوهُم بِإِحْسَٰنٍ رَّضِىَ ٱللَّهُ عَنْهُمْ وَرَضُوا۟ عَنْهُ وَأَعَدَّ لَهُمْ جَنَّٰتٍ تَجْرِى تَحْتَهَا ٱلْأَنْهَٰرُ خَٰلِدِينَ فِيهَآ أَبَدًا ۚ ذَٰلِكَ ٱلْفَوْزُ ٱلْعَظِيمُ ﴿١٠٠﴾

100. ಮುಹಾಜಿರ್ ಮತ್ತು ಅನ್ಸಾರ್‌ಗಳಲ್ಲಿ ಮೊತ್ತಮೊದಲು ಸತ್ಯವಿಶ್ವಾಸ ಸ್ವೀಕರಿಸಿ ಮುಂಚೂಣಿಯಲ್ಲಿರುವವರ ಬಗ್ಗೆ ಮತ್ತು ಒಳಿತಿನ ಮೂಲಕ ಅವರನ್ನು ಹಿಂಬಾಲಿಸಿದವರ ಬಗ್ಗೆ ಅಲ್ಲಾಹು ಸಂಪ್ರೀತನಾಗಿದ್ದಾನೆ. ಅವನ ಬಗ್ಗೆ ಅವರೂ ಸಂಪ್ರೀತರಾಗಿದ್ದಾರೆ. ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳನ್ನು ಅವನು ಅವರಿಗಾಗಿ ಸಿದ್ಧಗೊಳಿಸಿದ್ದಾನೆ. ಅವರು ಅದರಲ್ಲಿ ಸದಾಕಾಲ ಶಾಶ್ವತವಾಗಿ ವಾಸಿಸುವರು. ಅದೇ ಅತಿದೊಡ್ಡ ವಿಜಯ.

---

وَمِمَّنْ حَوْلَكُم مِّنَ ٱلْأَعْرَابِ مُنَٰفِقُونَ ۖ وَمِنْ أَهْلِ ٱلْمَدِينَةِ مَرَدُوا۟ عَلَى ٱلنِّفَاقِ لَا تَعْلَمُهُمْ ۖ نَحْنُ نَعْلَمُهُمْ ۚ سَنُعَذِّبُهُم مَّرَّتَيْنِ ثُمَّ يُرَدُّونَ إِلَىٰ عَذَابٍ عَظِيمٍ ﴿١٠١﴾

101. ನಿಮ್ಮ ಸುತ್ತಮುತ್ತಲಲ್ಲಿರುವ ಅಲೆಮಾರಿ ಅರಬ್ಬಿಗಳಲ್ಲಿ ಕಪಟವಿಶ್ವಾಸಿಗಳಿದ್ದಾರೆ. ಮದೀನಾ ನಿವಾಸಿಗಳಲ್ಲೂ ಇದ್ದಾರೆ. ಅವರು ಕಪಟತೆಯಲ್ಲಿ ಮಿತಿಮೀರಿದ್ದಾರೆ. ನಿಮಗೆ ಅವರ ಬಗ್ಗೆ ತಿಳಿದಿಲ್ಲ. ಆದರೆ ನಮಗೆ ಅವರ ಬಗ್ಗೆ ತಿಳಿದಿದೆ. ನಾವು ಸದ್ಯವೇ ಅವರನ್ನು ಎರಡು ಬಾರಿ ಶಿಕ್ಷಿಸುವೆವು. ನಂತರ ಅವರನ್ನು ಘೋರ ಶಿಕ್ಷೆಗೆ ತಳ್ಳಲಾಗುವುದು.

---

وَءَاخَرُونَ ٱعْتَرَفُوا۟ بِذُنُوبِهِمْ خَلَطُوا۟ عَمَلًا

102. ತಮ್ಮ ತಪ್ಪುಗಳನ್ನು ಒಪ್ಪಿಕೊಂಡ ಬೇರೆ ಕೆಲವರಿದ್ದಾರೆ.[1] ಅವರು

[1] ಇವರು ಸತ್ಯವಿಶ್ವಾಸಿಗಳು. ಆದರೆ ಇವರು ತಬೂಕ್ ಯುದ್ಧಕ್ಕೆ ಹೋಗಿರಲಿಲ್ಲ. ಆದರೆ ನಂತರ ಇವರಿಗೆ ತಮ್ಮ ತಪ್ಪಿನ ಅರಿವಾಗಿ ಪಶ್ಚಾತ್ತಾಪಪಟ್ಟರು.

صَٰلِحًا وَءَاخَرَ سَيِّئًا عَسَى ٱللَّهُ أَن يَتُوبَ
عَلَيۡهِمۡۚ إِنَّ ٱللَّهَ غَفُورٞ رَّحِيمٌ ١٠٢

ಒಳ್ಳೆಯ ಮತ್ತು ಕೆಟ್ಟ ಕರ್ಮಗಳನ್ನು ಮಿಶ್ರಗೊಳಿಸಿದ್ದಾರೆ. ಅಲ್ಲಾಹು ಅವರ ಪಶ್ಚಾತ್ತಾಪವನ್ನು ಸ್ವೀಕರಿಸಲೂಬಹುದು. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

خُذۡ مِنۡ أَمۡوَٰلِهِمۡ صَدَقَةٗ تُطَهِّرُهُمۡ وَتُزَكِّيهِم بِهَا
وَصَلِّ عَلَيۡهِمۡۖ إِنَّ صَلَوٰتَكَ سَكَنٞ لَّهُمۡۗ وَٱللَّهُ
سَمِيعٌ عَلِيمٌ ١٠٣

103. ನೀವು ಅವರ ಸಂಪತ್ತುಗಳಿಂದ ದಾನವನ್ನು ಪಡೆಯಿರಿ. ಅದರ ಮೂಲಕ ನೀವು ಅವರನ್ನು ಶುದ್ಧೀಕರಿಸುತ್ತೀರಿ. ಅವರಿಗೋಸ್ಕರ ಪ್ರಾರ್ಥಿಸಿರಿ. ನಿಶ್ಚಯವಾಗಿಯೂ ನಿಮ್ಮ ಪ್ರಾರ್ಥನೆಯು ಅವರ ಪಾಲಿಗೆ ಸಮಾಧಾನವಾಗಿದೆ. ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

أَلَمۡ يَعۡلَمُوٓاْ أَنَّ ٱللَّهَ هُوَ يَقۡبَلُ ٱلتَّوۡبَةَ عَنۡ
عِبَادِهِۦ وَيَأۡخُذُ ٱلصَّدَقَٰتِ وَأَنَّ ٱللَّهَ هُوَ
ٱلتَّوَّابُ ٱلرَّحِيمُ ١٠٤

104. ನಿಶ್ಚಯವಾಗಿಯೂ ಅಲ್ಲಾಹನೇ ತನ್ನ ದಾಸರ ಪಶ್ಚಾತ್ತಾಪವನ್ನು ಸ್ವೀಕರಿಸುತ್ತಾನೆ ಮತ್ತು ಅವರಿಂದ ದಾನಧರ್ಮಗಳನ್ನು ತೆಗೆ-ದುಕೊಳ್ಳುತ್ತಾನೆ; ಅವನು ಪಶ್ಚಾತ್ತಾಪ ಸ್ವೀಕರಿಸುವವನು ಮತ್ತು ಕರುಣೆ ತೋರುವವನಾಗಿದ್ದಾನೆಂದು ಅವರಿಗೆ ತಿಳಿದಿಲ್ಲವೇ?

وَقُلِ ٱعۡمَلُواْ فَسَيَرَى ٱللَّهُ عَمَلَكُمۡ وَرَسُولُهُۥ
وَٱلۡمُؤۡمِنُونَۖ وَسَتُرَدُّونَ إِلَىٰ عَٰلِمِ ٱلۡغَيۡبِ
وَٱلشَّهَٰدَةِ فَيُنَبِّئُكُم بِمَا كُنتُمۡ تَعۡمَلُونَ ١٠٥

105. ಹೇಳಿರಿ: “ನೀವು ಕರ್ಮವೆಸಗಿರಿ. ಅಲ್ಲಾಹು, ಅವನ ಸಂದೇಶವಾಹಕರು ಮತ್ತು ಸತ್ಯವಿಶ್ವಾಸಿಗಳು ನಿಮ್ಮ ಕರ್ಮಗಳನ್ನು ನೋಡುವರು. ನಂತರ ನಿಮ್ಮನ್ನು ದೃಶ್ಯ-ಅದೃಶ್ಯಗಳನ್ನು ತಿಳಿದವನ (ಅಲ್ಲಾಹನ) ಬಳಿಗೆ ಮರಳಿಸಲಾಗುವುದು. ಆಗ ನೀವೇನು ಮಾಡುತ್ತಿದ್ದಿರಿ ಎಂದು ಅವನು ನಿಮಗೆ ತಿಳಿಸಿಕೊಡುವನು.”

وَءَاخَرُونَ مُرۡجَوۡنَ لِأَمۡرِ ٱللَّهِ إِمَّا يُعَذِّبُهُمۡ وَإِمَّا
يَتُوبُ عَلَيۡهِمۡۗ وَٱللَّهُ عَلِيمٌ حَكِيمٞ ١٠٦

106. ಅಲ್ಲಾಹನ ಆಜ್ಞೆ ಬರುವ ತನಕ ತೀರ್ಪನ್ನು ಕಾದಿರಿಸಲಾದ ಕೆಲವರಿದ್ದಾರೆ. ಅಲ್ಲಾಹು ಅವರನ್ನು ಶಿಕ್ಷಿಸಬಹುದು ಅಥವಾ ಅವರ ಪಶ್ಚಾತ್ತಾಪವನ್ನು ಸ್ವೀಕರಿಸಬಹುದು. ಅಲ್ಲಾಹು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ.[1]

وَٱلَّذِينَ ٱتَّخَذُواْ مَسۡجِدٗا ضِرَارٗا وَكُفۡرٗا وَتَفۡرِيقَۢا
بَيۡنَ ٱلۡمُؤۡمِنِينَ وَإِرۡصَادٗا لِّمَنۡ حَارَبَ ٱللَّهَ
وَرَسُولَهُۥ مِن قَبۡلُۚ وَلَيَحۡلِفُنَّ إِنۡ أَرَدۡنَآ إِلَّا
ٱلۡحُسۡنَىٰۖ وَٱللَّهُ يَشۡهَدُ إِنَّهُمۡ لَكَٰذِبُونَ ١٠٧

107. ಹಾನಿ ಮಾಡಲು, ಅಲ್ಲಾಹನನ್ನು ನಿಷೇಧಿಸಲು, ಸತ್ಯವಿಶ್ವಾಸಿಗಳ ನಡುವೆ ಒಡಕು ಮೂಡಿಸಲು ಮತ್ತು ಈಗಾಗಲೇ ಅಲ್ಲಾಹು ಮತ್ತು ಅವನ ಸಂದೇಶವಾಹಕರ ವಿರುದ್ಧ ಯುದ್ಧ ಮಾಡಿದವರಿಗೆ ಹೊಂಚುದಾಣವನ್ನು ನಿರ್ಮಿಸಿಕೊಡಲು ಒಂದು ಮಸೀದಿಯನ್ನು[2] ನಿರ್ಮಿಸಿದವರು ಯಾರೋ—ಅವರು, “ನಾವು ಒಳಿತನ್ನು

[1] ತಬೂಕ್ ಯುದ್ಧಕ್ಕೆ ಹೋಗದೆ ಹಿಂದೆ ಉಳಿದವರಲ್ಲಿ ಒಂದು ಗುಂಪು ಕಪಟವಿಶ್ವಾಸಿಗಳದ್ದು. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮತ್ತು ಸತ್ಯವಿಶ್ವಾಸಿಗಳು ಯುದ್ಧದಿಂದ ಹಿಂದಿರುಗಿ ಬಂದಾಗ ಇವರು ಸುಳ್ಳು ನೆಪಗಳನ್ನು ಹೇಳಿ ತಪ್ಪಿಸಿಕೊಂಡರು. ಆದರೆ ಯುದ್ಧಕ್ಕೆ ಹೋಗದ ಸತ್ಯವಿಶ್ವಾಸಿಗಳು ಸುಳ್ಳು ನೆಪಗಳನ್ನು ಹೇಳಲಿಲ್ಲ. ಬದಲಿಗೆ, ನಿಜವನ್ನೇ ಹೇಳಿದರು. ಆದ್ದರಿಂದ ಅವರ ತೀರ್ಪನ್ನು ಅಲ್ಲಾಹನ ಆಜ್ಞೆ ಬರುವ ತನಕ ಕಾದಿರಿಸಲಾಯಿತು.

[2] ಇಲ್ಲಿ ಸೂಚಿಸಿರುವುದು ಕಪಟವಿಶ್ವಾಸಿಗಳು ಮದೀನದ ಕುಬಾ ಮಸೀದಿಯ ಸಮೀಪ ನಿರ್ಮಿಸಿದ ಇನ್ನೊಂದು ಮಸೀದಿ. ಇದನ್ನು ಮಸ್ಜಿದ್ ದಿರಾರ್ (ಹಾನಿಕರ ಮಸೀದಿ) ಎಂದು ಕುರ್‌ಆನ್ ಕರೆದಿದೆ.

ಮಾತ್ರ ಉದ್ದೇಶಿಸುತ್ತೇವೆ” ಎಂದು ಆಣೆ ಮಾಡಿ ಹೇಳುತ್ತಾರೆ. ಆದರೆ ಅವರು ಸುಳ್ಳು ಹೇಳುತ್ತಿದ್ದಾರೆ ಎಂಬುದಕ್ಕೆ ಅಲ್ಲಾಹು ಸಾಕ್ಷಿಯಾಗಿದ್ದಾನೆ.

---

108. ನೀವು ಯಾವತ್ತೂ ಅಲ್ಲಿ (ನಮಾಝ್ ಮಾಡಲು) ನಿಲ್ಲಬೇಡಿ. ನಿಮಗೆ ನಿಲ್ಲಲು (ನಮಾಝ್ ಮಾಡಲು) ಹೆಚ್ಚು ಅರ್ಹವಾಗಿರುವುದು ಮೊದಲ ದಿನದಿಂದಲೇ ದೇವಭಯದ ಆಧಾರದಲ್ಲಿ ನಿರ್ಮಿಸಲಾದ ಮಸೀದಿಯಾಗಿದೆ. ಅಲ್ಲಿ (ಆ ಮಸೀದಿಯಲ್ಲಿ) ಶುದ್ಧಿಯಾಗಲು ಇಷ್ಟಪಡುವ ಜನರಿದ್ದಾರೆ. ಅಲ್ಲಾಹು ಶುದ್ಧಿಯಾಗಿರುವವರನ್ನು ಇಷ್ಟಪಡುತ್ತಾನೆ.

لَا تَقُمۡ فِيهِ أَبَدٗاۚ لَّمَسۡجِدٌ أُسِّسَ عَلَى ٱلتَّقۡوَىٰ مِنۡ أَوَّلِ يَوۡمٍ أَحَقُّ أَن تَقُومَ فِيهِۚ فِيهِ رِجَالٞ يُحِبُّونَ أَن يَتَطَهَّرُواْۚ وَٱللَّهُ يُحِبُّ ٱلۡمُطَّهِّرِينَ ١٠٨

---

109. ಅಲ್ಲಾಹನ ಭಯ ಮತ್ತು ಸಂಪ್ರೀತಿಯ ತಳಹದಿಯ ಮೇಲೆ ತನ್ನ ಕಟ್ಟಡವನ್ನು ನಿರ್ಮಿಸಿದವನು ಉತ್ತಮನೋ ಅಥವಾ ಕುಸಿಯುವ ಹಂತದಲ್ಲಿರುವ ಪ್ರಪಾತದ ಅಂಚಿನಲ್ಲಿ ತನ್ನ ಕಟ್ಟಡವನ್ನು ನಿರ್ಮಿಸಿ ಅದರೊಂದಿಗೆ ನರಕಾಗ್ನಿಗೆ ಕುಸಿದು ಬಿದ್ದವನೋ? ಅಕ್ರಮಿಗಳಾದ ಜನರಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ.

أَفَمَنۡ أَسَّسَ بُنۡيَٰنَهُۥ عَلَىٰ تَقۡوَىٰ مِنَ ٱللَّهِ وَرِضۡوَٰنٍ خَيۡرٌ أَم مَّنۡ أَسَّسَ بُنۡيَٰنَهُۥ عَلَىٰ شَفَا جُرُفٍ هَارٖ فَٱنۡهَارَ بِهِۦ فِي نَارِ جَهَنَّمَۗ وَٱللَّهُ لَا يَهۡدِي ٱلۡقَوۡمَ ٱلظَّٰلِمِينَ ١٠٩

---

110. ಅವರು ನಿರ್ಮಿಸಿದ ಅವರ ಕಟ್ಟಡವು ಅವರ ಹೃದಯಗಳಲ್ಲಿ ಸಂಶಯ ಪಿಶಾಚಿಯಂತೆ ಅವರನ್ನು ಸತತವಾಗಿ ಚುಚ್ಚುತ್ತಲೇ ಇರುವುದು. ಅಲ್ಲಾಹು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ.

لَا يَزَالُ بُنۡيَٰنُهُمُ ٱلَّذِي بَنَوۡاْ رِيبَةٗ فِي قُلُوبِهِمۡ إِلَّآ أَن تَقَطَّعَ قُلُوبُهُمۡۗ وَٱللَّهُ عَلِيمٌ حَكِيمٌ ١١٠

---

111. ನಿಶ್ಚಯವಾಗಿಯೂ ಅಲ್ಲಾಹು ಸತ್ಯವಿಶ್ವಾಸಿಗಳಿಂದ, ಅವರಿಗೆ ಸ್ವರ್ಗವನ್ನು ನೀಡುವೆನು ಎಂಬುದಕ್ಕೆ ಬದಲಿಯಾಗಿ, ಅವರ ತನು-ಧನಗಳನ್ನು ಖರೀದಿಸಿದ್ದಾನೆ. ಅವರು ಅಲ್ಲಾಹನ ಮಾರ್ಗದಲ್ಲಿ ಯುದ್ಧ ಮಾಡುತ್ತಾ (ವೈರಿಗಳನ್ನು) ಕೊಲ್ಲುತ್ತಾರೆ ಮತ್ತು (ವೈರಿಗಳಿಂದ) ಕೊಲೆಗೀಡಾಗುತ್ತಾರೆ. ಇದು ತೌರಾತ್‌ನಲ್ಲಿ, ಇಂಜೀಲ್‌ನಲ್ಲಿ ಮತ್ತು ಕುರ್‌ಆನ್‌ನಲ್ಲಿ ಅಲ್ಲಾಹು ನೀಡಿದ ಸತ್ಯ ವಾಗ್ದಾನವಾಗಿದೆ. ಅಲ್ಲಾಹನಿಗಿಂತಲೂ ಹೆಚ್ಚು ತನ್ನ ಕರಾರನ್ನು ಪೂರ್ತಿ ಮಾಡುವವನು ಯಾರು? ಆದ್ದರಿಂದ ನೀವು ಮಾಡಿರುವ ಈ ವ್ಯವಹಾರದಲ್ಲಿ ಸಂತೋಷಪಡಿರಿ. ಅದೇ ಅತಿದೊಡ್ಡ ಯಶಸ್ಸು.

إِنَّ ٱللَّهَ ٱشۡتَرَىٰ مِنَ ٱلۡمُؤۡمِنِينَ أَنفُسَهُمۡ وَأَمۡوَٰلَهُم بِأَنَّ لَهُمُ ٱلۡجَنَّةَۚ يُقَٰتِلُونَ فِي سَبِيلِ ٱللَّهِ فَيَقۡتُلُونَ وَيُقۡتَلُونَۖ وَعۡدًا عَلَيۡهِ حَقّٗا فِي ٱلتَّوۡرَىٰةِ وَٱلۡإِنجِيلِ وَٱلۡقُرۡءَانِۚ وَمَنۡ أَوۡفَىٰ بِعَهۡدِهِۦ مِنَ ٱللَّهِۚ فَٱسۡتَبۡشِرُواْ بِبَيۡعِكُمُ ٱلَّذِي بَايَعۡتُم بِهِۦۚ وَذَٰلِكَ هُوَ ٱلۡفَوۡزُ ٱلۡعَظِيمُ ١١١

---

112. ಪಶ್ಚಾತ್ತಾಪಪಡುವವರು, ಆರಾಧನೆ ಮಾಡುವವರು, ಸ್ತುತಿಕೀರ್ತನೆ ಮಾಡುವವರು, ಉಪವಾಸ ಆಚರಿಸುವವರು, ತಲೆಬಾಗುವವರು, ಸಾಷ್ಟಾಂಗ ಮಾಡುವವರು, ಒಳಿತನ್ನು ಆದೇಶಿಸುವವರು, ಕೆಡುಕನ್ನು ವಿರೋಧಿಸುವವರು ಮತ್ತು

ٱلتَّٰٓئِبُونَ ٱلۡعَٰبِدُونَ ٱلۡحَٰمِدُونَ ٱلسَّٰٓئِحُونَ ٱلرَّٰكِعُونَ ٱلسَّٰجِدُونَ ٱلۡأٓمِرُونَ بِٱلۡمَعۡرُوفِ وَٱلنَّاهُونَ عَنِ ٱلۡمُنكَرِ وَٱلۡحَٰفِظُونَ لِحُدُودِ

ಅಲ್ಲಾಹನ ಎಲ್ಲೆಗಳನ್ನು ಸಂರಕ್ಷಿಸುವವರು (ಇವರೇ ಸತ್ಯವಿಶ್ವಾ-
ಸಿಗಳು). ಆ ಸತ್ಯವಿಶ್ವಾಸಿಗಳಿಗೆ ಶುಭವಾರ್ತೆಯನ್ನು ತಿಳಿಸಿರಿ.

ٱللَّهِۗ وَبَشِّرِ ٱلۡمُؤۡمِنِينَ ﴿١١٢﴾

113. ಬಹುದೇವವಿಶ್ವಾಸಿಗಳು ನರಕವಾಸಿಗಳೆಂದು ಸ್ಪಷ್ಟವಾದ ಬಳಿಕ
ಅವರಿಗೋಸ್ಕರ (ಅಲ್ಲಾಹನಲ್ಲಿ) ಕ್ಷಮೆಯಾಚನೆ ಮಾಡಲು
ಪ್ರವಾದಿಗೆ ಮತ್ತು ಸತ್ಯವಿಶ್ವಾಸಿಗಳಿಗೆ ಅನುಮತಿಯಿಲ್ಲ. ಅವರು
ಆಪ್ತ ಸಂಬಂಧಿಕರಾಗಿದ್ದರೂ ಸಹ.

مَا كَانَ لِلنَّبِيِّ وَٱلَّذِينَ ءَامَنُوٓاْ أَن يَسۡتَغۡفِرُواْ
لِلۡمُشۡرِكِينَ وَلَوۡ كَانُوٓاْ أُوْلِي قُرۡبَىٰ مِنۢ بَعۡدِ مَا
تَبَيَّنَ لَهُمۡ أَنَّهُمۡ أَصۡحَٰبُ ٱلۡجَحِيمِ ﴿١١٣﴾

114. ಇಬ್ರಾಹೀಮರು ತಮ್ಮ ತಂದೆಗೋಸ್ಕರ (ಅಲ್ಲಾಹನಲ್ಲಿ)
ಕ್ಷಮೆಯಾಚನೆ ಮಾಡಿರುವುದು ಅವರು ತಂದೆಗೆ ಕೊಟ್ಟ
ಮಾತನ್ನು ಪಾಲಿಸುವುದಕ್ಕಾಗಿತ್ತು. ಆದರೆ ತಂದೆ ಅಲ್ಲಾಹನ
ವೈರಿಯೆಂದು ಸ್ಪಷ್ಟವಾದಾಗ ಅವರು ತಂದೆಯಿಂದ
ದೂರವಾದರು. ನಿಶ್ಚಯವಾಗಿಯೂ ಇಬ್ರಾಹೀಮರು ಅತ್ಯಂತ
ಮೃದು ಹೃದಯದವರು ಮತ್ತು ಸಹಿಷ್ಣುವಾಗಿದ್ದರು.

وَمَا كَانَ ٱسۡتِغۡفَارُ إِبۡرَٰهِيمَ لِأَبِيهِ إِلَّا عَن
مَّوۡعِدَةٖ وَعَدَهَآ إِيَّاهُ فَلَمَّا تَبَيَّنَ لَهُۥٓ أَنَّهُۥ عَدُوّٞ
لِّلَّهِ تَبَرَّأَ مِنۡهُۚ إِنَّ إِبۡرَٰهِيمَ لَأَوَّٰهٌ حَلِيمٞ ﴿١١٤﴾

115. ಅಲ್ಲಾಹು ಜನರಿಗೆ ಸನ್ಮಾರ್ಗವನ್ನು ತೋರಿಸಿದ ಬಳಿಕ ಅವರನ್ನು
ದಾರಿತಪ್ಪಿಸುವುದಿಲ್ಲ—ಅವರು ಯಾವುದರಿಂದ ತಮ್ಮನ್ನು ರಕ್ಷಿ-
ಸಿಕೊಳ್ಳಬೇಕೆಂದು ಅವರಿಗೆ ಸ್ಪಷ್ಟವಾಗಿ ವಿವರಿಸಿಕೊಡುವ
ತನಕ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ವಿಷಯಗಳನ್ನು
ತಿಳಿದವನಾಗಿದ್ದಾನೆ.

وَمَا كَانَ ٱللَّهُ لِيُضِلَّ قَوۡمَۢا بَعۡدَ إِذۡ هَدَىٰهُمۡ
حَتَّىٰ يُبَيِّنَ لَهُم مَّا يَتَّقُونَۚ إِنَّ ٱللَّهَ بِكُلِّ شَيۡءٍ
عَلِيمٌ ﴿١١٥﴾

116. ನಿಶ್ಚಯವಾಗಿಯೂ ಭೂಮ್ಯಾಕಾಶಗಳ ಸಾರ್ವಭೌಮತ್ವವು
ಅಲ್ಲಾಹನಿಗೆ ಸೇರಿದ್ದು. ಅವನು ಜೀವ ಮತ್ತು ಮರಣವನ್ನು
ನೀಡುತ್ತಾನೆ. ಅಲ್ಲಾಹನ ಹೊರತು ನಿಮಗೆ ಬೇರೆ ರಕ್ಷಕರು
ಅಥವಾ ಸಹಾಯಕರಿಲ್ಲ.

إِنَّ ٱللَّهَ لَهُۥ مُلۡكُ ٱلسَّمَٰوَٰتِ وَٱلۡأَرۡضِۖ يُحۡيِۦ
وَيُمِيتُۚ وَمَا لَكُم مِّن دُونِ ٱللَّهِ مِن وَلِيّٖ وَلَا
نَصِيرٖ ﴿١١٦﴾

117. ನಿಶ್ಚಯವಾಗಿಯೂ ಅಲ್ಲಾಹು ಪ್ರವಾದಿಯನ್ನು ಮತ್ತು ಸಂದಿಗ್ಧ
ಸ್ಥಿತಿಯಲ್ಲಿ ಅವರನ್ನು ಹಿಂಬಾಲಿಸಿದ ಮುಹಾಜಿರ್ ಮತ್ತು
ಅನ್ಸಾರರನ್ನು ಕ್ಷಮಿಸಿದ್ದಾನೆ. ನಂತರ ಅಲ್ಲಾಹು ಅವರ ಪಶ್ಚಾತ್ತಾ-
ಪವನ್ನು ಸ್ವೀಕರಿಸಿದನು. ನಿಶ್ಚಯವಾಗಿಯೂ ಅವನು ಅವರೊಡನೆ
ಕೃಪೆ ಮತ್ತು ದಯೆಯುಳ್ಳವನಾಗಿದ್ದಾನೆ.

لَّقَد تَّابَ ٱللَّهُ عَلَى ٱلنَّبِيِّ وَٱلۡمُهَٰجِرِينَ
وَٱلۡأَنصَارِ ٱلَّذِينَ ٱتَّبَعُوهُ فِي سَاعَةِ ٱلۡعُسۡرَةِ مِنۢ
بَعۡدِ مَا كَادَ يَزِيغُ قُلُوبُ فَرِيقٖ مِّنۡهُمۡ ثُمَّ تَابَ
عَلَيۡهِمۡۚ إِنَّهُۥ بِهِمۡ رَءُوفٞ رَّحِيمٞ ﴿١١٧﴾

118. ತೀರ್ಪು ಕಾದಿರಿಸಲಾದ ಆ ಮೂವರನ್ನೂ (ಅಲ್ಲಾಹು ಕ್ಷಮಿಸಿ-
ದ್ದಾನೆ).[1] ಎಲ್ಲಿಯವರೆಗೆಂದರೆ, ಭೂಮಿಯು ವಿಶಾಲವಾಗಿದ್ದೂ
ಸಹ ಅವರಿಗೆ ಅದು ಇಕ್ಕಟ್ಟಾದಂತೆ ತೋರಿತು, ಅವರ

وَعَلَى ٱلثَّلَٰثَةِ ٱلَّذِينَ خُلِّفُواْ حَتَّىٰٓ إِذَا ضَاقَتۡ
عَلَيۡهِمُ ٱلۡأَرۡضُ بِمَا رَحُبَتۡ وَضَاقَتۡ عَلَيۡهِمۡ

[1] ತೀರ್ಪು ಕಾದಿರಿಸಲಾದವರು ಎಂದು 106ನೇ ವಚನದಲ್ಲಿ ಹೇಳಿದ್ದು ಈ ಮೂವರ ಬಗ್ಗೆ. ಅವರು ಕಅಬ್ ಬಿನ್ ಮಾಲಿಕ್, ಹಿಲಾಲ್ ಬಿನ್ ಉಮಯ್ಯಃ ಮತ್ತು ಮುರಾರ ಬಿನ್ ರಬೀಅ್. ಇವರು ತಬೂಕ್ ಯುದ್ಧಕ್ಕೆ ಹೋಗದಿರಲು ಸೂಕ್ತ ಕಾರಣಗಳೇನೂ ಇಲ್ಲದಿದ್ದರೂ ಸಹ ಹೋಗಿರಲಿಲ್ಲ.

ಹೃದಯಗಳು ಅವರಿಗೆ ಇಕ್ಕಟ್ಟಾಗಿ ಪರಿಣಮಿಸಿತು ಮತ್ತು ಅಲ್ಲಾಹನಿಗೆ ವಿರುದ್ಧವಾಗಿ ಅವನ ಬಳಿಯೇ ಹೊರತು ಬೇರೆ ಆಶ್ರಯವಿಲ್ಲವೆಂದು ಅವರಿಗೆ ಖಾತ್ರಿಯಾಯಿತು. ಆದ್ದರಿಂದ ಅವರು ಪಶ್ಚಾತ್ತಾಪಪಟ್ಟು ಮರಳುವುದಕ್ಕಾಗಿ ಅಲ್ಲಾಹು ಅವರನ್ನು ಕ್ಷಮಿಸಿದನು. ನಿಶ್ಚಯವಾಗಿಯೂ ಅಲ್ಲಾಹು ಪಶ್ಚಾತ್ತಾಪ ಸ್ವೀಕರಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

أَنفُسُهُمْ وَظَنُّوٓاْ أَن لَّا مَلْجَأَ مِنَ ٱللَّهِ إِلَّآ إِلَيْهِ ثُمَّ تَابَ عَلَيْهِمْ لِيَتُوبُوٓاْ ۚ إِنَّ ٱللَّهَ هُوَ ٱلتَّوَّابُ ٱلرَّحِيمُ ﴿١١٨﴾

---

119. ಓ ಸತ್ಯವಿಶ್ವಾಸಿಗಳೇ! ಅಲ್ಲಾಹನನ್ನು ಭಯಪಡಿರಿ ಮತ್ತು ಸತ್ಯವಂತರಲ್ಲಿ ಸೇರಿಕೊಳ್ಳಿ.

يَٰٓأَيُّهَا ٱلَّذِينَ ءَامَنُواْ ٱتَّقُواْ ٱللَّهَ وَكُونُواْ مَعَ ٱلصَّٰدِقِينَ ﴿١١٩﴾

---

120. ಪ್ರವಾದಿಯವರನ್ನು ಬಿಟ್ಟು ಹಿಂದೆ ಉಳಿಯುವುದು (ಯುದ್ಧಕ್ಕೆ ಹೋಗದೆ ಮನೆಯಲ್ಲೇ ಕುಳಿತುಕೊಳ್ಳುವುದು) ಮತ್ತು ಅವರಿಗಿಂತಲೂ ಹೆಚ್ಚು ತಮ್ಮ ಕೆಲಸ-ಕಾರ್ಯಗಳಿಗೆ ಪ್ರಾಶಸ್ತ್ಯ ನೀಡುವುದು ಮದೀನಾ ನಿವಾಸಿಗಳಿಗೆ ಮತ್ತು ಅದರ ಸುತ್ತಲಿರುವ ಮರುಭೂಮಿ ನಿವಾಸಿಗಳಾದ ಅರಬ್ಬಿಗಳಿಗೆ ಭೂಷಣವಲ್ಲ. ಅದೇಕೆಂದರೆ, ಅಲ್ಲಾಹನ ಮಾರ್ಗದಲ್ಲಿ ಅವರಿಗೆ ಯಾವುದೇ ದಾಹ, ಆಯಾಸ ಅಥವಾ ಹಸಿವು ಸಂಭವಿಸಿದರೂ, ಸತ್ಯನಿಷೇಧಿಗಳನ್ನು ಕೆರಳಿಸುವ ಯಾವುದೇ ಪ್ರದೇಶದಲ್ಲಿ ಅವರು ಕಾಲೂರಿದರೂ, ಅಥವಾ ವೈರಿಗಳಿಗೆ ಅವರು ಯಾವುದೇ ನಾಶ-ನಷ್ಟ ತಂದಿಟ್ಟರೂ, ಅವುಗಳಿಗೆ ಬದಲಿಯಾಗಿ ಅವರಿಗೆ ಒಂದು ಸತ್ಕರ್ಮವನ್ನು ದಾಖಲಿಸಲಾಗುವುದು. ಒಳಿತು ಮಾಡುವವರ ಕರ್ಮಗಳನ್ನು ಅಲ್ಲಾಹು ವ್ಯರ್ಥಗೊಳಿಸುವುದಿಲ್ಲ.

مَا كَانَ لِأَهْلِ ٱلْمَدِينَةِ وَمَنْ حَوْلَهُم مِّنَ ٱلْأَعْرَابِ أَن يَتَخَلَّفُواْ عَن رَّسُولِ ٱللَّهِ وَلَا يَرْغَبُواْ بِأَنفُسِهِمْ عَن نَّفْسِهِۦ ۚ ذَٰلِكَ بِأَنَّهُمْ لَا يُصِيبُهُمْ ظَمَأٌ وَلَا نَصَبٌ وَلَا مَخْمَصَةٌ فِى سَبِيلِ ٱللَّهِ وَلَا يَطَـُٔونَ مَوْطِئًا يَغِيظُ ٱلْكُفَّارَ وَلَا يَنَالُونَ مِنْ عَدُوٍّ نَّيْلًا إِلَّا كُتِبَ لَهُم بِهِۦ عَمَلٌ صَٰلِحٌ ۚ إِنَّ ٱللَّهَ لَا يُضِيعُ أَجْرَ ٱلْمُحْسِنِينَ ﴿١٢٠﴾

---

121. ಅವರು ಸಣ್ಣ ಮೊತ್ತದಲ್ಲಿ ಅಥವಾ ದೊಡ್ಡ ಮೊತ್ತದಲ್ಲಿ ಖರ್ಚು ಮಾಡಿದರೂ, ಅಥವಾ ಯಾವುದೇ ಕಣಿವೆಯನ್ನು ದಾಟಿದರೂ—ಅವರು ಮಾಡಿದ ಕರ್ಮಗಳಿಗೆ ಅತ್ಯುತ್ತಮ ಪ್ರತಿಫಲ ನೀಡುವುದಕ್ಕಾಗಿ ಇವೆಲ್ಲವನ್ನೂ ದಾಖಲಿಸಿಡಲಾಗುವುದು.

وَلَا يُنفِقُونَ نَفَقَةً صَغِيرَةً وَلَا كَبِيرَةً وَلَا يَقْطَعُونَ وَادِيًا إِلَّا كُتِبَ لَهُمْ لِيَجْزِيَهُمُ ٱللَّهُ أَحْسَنَ مَا كَانُواْ يَعْمَلُونَ ﴿١٢١﴾

---

122. ಸತ್ಯವಿಶ್ವಾಸಿಗಳೆಲ್ಲರೂ ಒಟ್ಟಿಗೆ ಯುದ್ಧಕ್ಕೆ ಹೊರಡುವುದು ಸರಿಯಲ್ಲ. ಬದಲಿಗೆ, ಅವರಲ್ಲಿರುವ ಒಂದೊಂದು ವಿಭಾಗದಿಂದ ಒಂದೊಂದು ಗುಂಪು ಜನರು ಯುದ್ಧಕ್ಕೆ ಹೊರಟು, ಉಳಿದವರು ಧರ್ಮದ ಬಗ್ಗೆ ತಿಳುವಳಿಕೆಯನ್ನು ಪಡೆದು, ನಂತರ ಆ ಜನರು ತಮ್ಮ ಬಳಿಗೆ ಮರಳಿ ಬಂದಾಗ, ಅವರು (ಅಲ್ಲಾಹನನ್ನು) ಭಯಪಟ್ಟು ಜೀವಿಸುವುದಕ್ಕಾಗಿ ಅವರಿಗೆ (ಧಾರ್ಮಿಕ ನಿಯಮಗಳ ಬಗ್ಗೆ) ತಿಳುವಳಿಕೆ ನೀಡಬಾರದೇಕೆ?

وَمَا كَانَ ٱلْمُؤْمِنُونَ لِيَنفِرُواْ كَآفَّةً ۚ فَلَوْلَا نَفَرَ مِن كُلِّ فِرْقَةٍ مِّنْهُمْ طَآئِفَةٌ لِّيَتَفَقَّهُواْ فِى ٱلدِّينِ وَلِيُنذِرُواْ قَوْمَهُمْ إِذَا رَجَعُوٓاْ إِلَيْهِمْ لَعَلَّهُمْ يَحْذَرُونَ ﴿١٢٢﴾

123. ಓ ಸತ್ಯವಿಶ್ವಾಸಿಗಳೇ! ನಿಮ್ಮ ಆಸುಪಾಸಿನಲ್ಲಿರುವ ಸತ್ಯನಿಷೇಧಿಗಳ ವಿರುದ್ಧ ಯುದ್ಧ ಮಾಡಿರಿ. ಅವರು ನಿಮ್ಮಲ್ಲಿ ಕಠೋರತೆಯನ್ನು ಕಾಣಲಿ. ತಿಳಿಯಿರಿ! ನಿಶ್ಚಯವಾಗಿಯೂ ಅಲ್ಲಾಹು ದೇವಭಯ-ವುಳ್ಳವರೊಡನೆ ಇದ್ದಾನೆ.

يَٰٓأَيُّهَا ٱلَّذِينَ ءَامَنُواْ قَٰتِلُواْ ٱلَّذِينَ يَلُونَكُم
مِّنَ ٱلْكُفَّارِ وَلْيَجِدُواْ فِيكُمْ غِلْظَةًۚ وَٱعْلَمُوٓاْ
أَنَّ ٱللَّهَ مَعَ ٱلْمُتَّقِينَ ١٢٣

124. ಒಂದು ಅಧ್ಯಾಯವು ಅವತೀರ್ಣವಾದಾಗ ಅವರಲ್ಲಿ ಕೆಲವರು ಕೇಳುತ್ತಾರೆ: "ಇದು ನಿಮ್ಮಲ್ಲಿ ಯಾರಿಗೆ ವಿಶ್ವಾಸವನ್ನು ಹೆಚ್ಚಿಸಿದೆ?" ಸತ್ಯವಿಶ್ವಾಸಿಗಳು ಯಾರೋ—ಅವರಿಗೆ ಅದು ವಿಶ್ವಾಸವನ್ನು ಹೆಚ್ಚಿಸಿದೆ. ಅವರು ಅದರಲ್ಲಿ ಸಂತೋಷಪಡುತ್ತಾರೆ.

وَإِذَا مَآ أُنزِلَتْ سُورَةٌ فَمِنْهُم مَّن يَقُولُ أَيُّكُمْ
زَادَتْهُ هَٰذِهِۦٓ إِيمَٰنًاۚ فَأَمَّا ٱلَّذِينَ ءَامَنُواْ فَزَادَتْهُمْ
إِيمَٰنًا وَهُمْ يَسْتَبْشِرُونَ ١٢٤

125. ಆದರೆ ಯಾರ ಹೃದಯಗಳಲ್ಲಿ ರೋಗವಿದೆಯೋ, ಅವರಿಗೆ ಅದು ಹೊಲಸಿನ ಮೇಲೆ ಹೊಲಸನ್ನು ಹೆಚ್ಚಿಸಿದೆ. ಅವರು ಸತ್ಯನಿಷೇಧಿಗ-ಳಾಗಿಯೇ ಸಾಯುತ್ತಾರೆ.

وَأَمَّا ٱلَّذِينَ فِى قُلُوبِهِم مَّرَضٌ فَزَادَتْهُمْ رِجْسًا
إِلَىٰ رِجْسِهِمْ وَمَاتُواْ وَهُمْ كَٰفِرُونَ ١٢٥

126. ಪ್ರತಿವರ್ಷವೂ ಅವರು ಒಂದು ಅಥವಾ ಎರಡು ಬಾರಿ ಪರೀಕ್ಷೆಗೆ ಗುರಿಯಾಗುವುದನ್ನು ಅವರು ನೋಡುವುದಿಲ್ಲವೇ? ಆದರೂ ಅವರು ಪಶ್ಚಾತ್ತಾಪಪಡುವುದಿಲ್ಲ. ಅವರು ಉಪದೇಶ ಸ್ವೀಕರಿಸುವುದೂ ಇಲ್ಲ.

أَوَلَا يَرَوْنَ أَنَّهُمْ يُفْتَنُونَ فِى كُلِّ عَامٍ مَّرَّةً أَوْ
مَرَّتَيْنِ ثُمَّ لَا يَتُوبُونَ وَلَا هُمْ يَذَّكَّرُونَ ١٢٦

127. ಯಾವುದೇ ಒಂದು ಅಧ್ಯಾಯವು ಅವತೀರ್ಣವಾದಾಗ ಅವರಲ್ಲಿ ಕೆಲವರು "ನಿಮ್ಮನ್ನು ಯಾರೂ ಗಮನಿಸುತ್ತಿಲ್ಲ ತಾನೇ?" ಎಂಬರ್ಥದಲ್ಲಿ ಇತರರನ್ನು ನೋಡುತ್ತಾರೆ. ನಂತರ ಅವರು ಅಲ್ಲಿಂದ ತೆರಳುತ್ತಾರೆ. ಅಲ್ಲಾಹು ಅವರ ಹೃದಯಗಳನ್ನು ತಿರುಗಿಸಿದ್ದಾನೆ. ಅವರು ಅರ್ಥಮಾಡಿಕೊಳ್ಳದ ಜನರಾಗಿರುವುದೇ ಅದಕ್ಕೆ ಕಾರಣ.

وَإِذَا مَآ أُنزِلَتْ سُورَةٌ نَّظَرَ بَعْضُهُمْ إِلَىٰ بَعْضٍ
هَلْ يَرَىٰكُم مِّنْ أَحَدٍ ثُمَّ ٱنصَرَفُواْۚ صَرَفَ ٱللَّهُ
قُلُوبَهُم بِأَنَّهُمْ قَوْمٌ لَّا يَفْقَهُونَ ١٢٧

128. ನಿಮ್ಮ ಬಳಿಗೆ ನಿಮ್ಮಿಂದಲೇ ಇರುವ ಒಬ್ಬ ಸಂದೇಶವಾಹಕರು ಬಂದಿದ್ದಾರೆ. ನೀವು ಕಷ್ಟ ಅನುಭವಿಸುವುದು ಅವರಿಗೆ ಸಂಕಟ-ದಾಯಕವಾಗಿದೆ. ಅವರಿಗೆ ನಿಮ್ಮ ಬಗ್ಗೆ ಕಳಕಳಿಯಿದೆ. ಅವರು ಸತ್ಯವಿಶ್ವಾಸಿಗಳೊಡನೆ ಕೃಪೆ ಮತ್ತು ದಯೆಯುಳ್ಳವರಾಗಿದ್ದಾರೆ.

لَقَدْ جَآءَكُمْ رَسُولٌ مِّنْ أَنفُسِكُمْ عَزِيزٌ
عَلَيْهِ مَا عَنِتُّمْ حَرِيصٌ عَلَيْكُم بِٱلْمُؤْمِنِينَ
رَءُوفٌ رَّحِيمٌ ١٢٨

129. ಅವರೇನಾದರೂ ತಿರುಗಿ ನಡೆದರೆ, ಹೇಳಿರಿ: "ನನಗೆ ಅಲ್ಲಾಹು ಸಾಕು. ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ನಾನು ಅವನಲ್ಲಿ ಭರವಸೆಯಿಟ್ಟಿದ್ದೇನೆ. ಅವನು ಮಹಾ ಸಿಂಹಾಸನದ ಒಡೆಯನಾಗಿದ್ದಾನೆ."

فَإِن تَوَلَّوْاْ فَقُلْ حَسْبِىَ ٱللَّهُ لَآ إِلَٰهَ إِلَّا هُوَۖ
عَلَيْهِ تَوَكَّلْتُۖ وَهُوَ رَبُّ ٱلْعَرْشِ ٱلْعَظِيمِ ١٢٩

# 10. ಯೂನುಸ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಅಲಿಫ್ ಲಾಮ್ ರಾ. ಇವು ವಿವೇಕಪೂರ್ಣ ಗ್ರಂಥದ ವಚನಗಳಾಗಿವೆ.

الٓرۚ تِلۡكَ ءَايَٰتُ ٱلۡكِتَٰبِ ٱلۡحَكِيمِ ١

2. ಜನರಿಗೆ ಮುನ್ನೆಚ್ಚರಿಕೆಯನ್ನು ನೀಡಿರಿ ಮತ್ತು ಸತ್ಯವಿಶ್ವಾಸಿಗಳಿಗೆ ಅವರ ಪರಿಪಾಲಕನ (ಅಲ್ಲಾಹನ) ಬಳಿ ಅವರ ಸತ್ಕರ್ಮಗಳ ಪೂರ್ಣ ಪ್ರತಿಫಲ ದೊರೆಯುವುದೆಯೆಂಬ ಶುಭವಾರ್ತೆಯನ್ನು ನೀಡಿರಿ ಎಂದು ನಾವು ಅವರಿಂದಲೇ ಇರುವ ಒಬ್ಬ ವ್ಯಕ್ತಿಗೆ ದಿವ್ಯವಾಣಿ ನೀಡಿರುವುದು ಜನರಿಗೆ ಅಚ್ಚರಿಯಾಗಿ ಕಾಣುತ್ತಿದೆಯೇ? ಸತ್ಯನಿಷೇಧಿಗಳು ಹೇಳಿದರು: “ನಿಶ್ಚಯವಾಗಿಯೂ ಇವನೊಬ್ಬ ಸ್ವತಃಸಿದ್ಧ ಮಾಟಗಾರನೇ ಸರಿ.”

أَكَانَ لِلنَّاسِ عَجَبًا أَنۡ أَوۡحَيۡنَآ إِلَىٰ رَجُلٖ مِّنۡهُمۡ أَنۡ أَنذِرِ ٱلنَّاسَ وَبَشِّرِ ٱلَّذِينَ ءَامَنُوٓاْ أَنَّ لَهُمۡ قَدَمَ صِدۡقٍ عِندَ رَبِّهِمۡۗ قَالَ ٱلۡكَٰفِرُونَ إِنَّ هَٰذَا لَسَٰحِرٞ مُّبِينٌ ٢

3. ನಿಶ್ಚಯವಾಗಿಯೂ ಭೂಮ್ಯಾಕಾಶಗಳನ್ನು ಆರು ದಿನಗಳಲ್ಲಿ ಸೃಷ್ಟಿಸಿದ ಅಲ್ಲಾಹನೇ ನಿಮ್ಮ ಪರಿಪಾಲಕ. ನಂತರ (ಅವನ ಮಹಾತ್ಮೆಗೆ ಹೊಂದಿಕೆಯಾಗುವ ರೀತಿಯಲ್ಲಿ) ಅವನು ಸಿಂಹಾಸನದಲ್ಲಿ ಆರೂಢನಾದನು. ಅವನು ಎಲ್ಲಾ ವಿಷಯಗಳನ್ನೂ ನಿಯಂತ್ರಿಸುತ್ತಾನೆ. ಅವನ ಅಪ್ಪಣೆಯ ನಂತರವೇ ಹೊರತು ಯಾರಿಗೂ ಶಿಫಾರಸು ಮಾಡಲು ಸಾಧ್ಯವಿಲ್ಲ. ಅವನೇ ನಿಮ್ಮ ಪರಿಪಾಲಕನಾದ ಅಲ್ಲಾಹು. ಆದ್ದರಿಂದ ಅವನನ್ನು ಮಾತ್ರ ಆರಾಧಿಸಿರಿ. ನೀವು ಉಪದೇಶ ಸ್ವೀಕರಿಸುವುದಿಲ್ಲವೇ?

إِنَّ رَبَّكُمُ ٱللَّهُ ٱلَّذِي خَلَقَ ٱلسَّمَٰوَٰتِ وَٱلۡأَرۡضَ فِي سِتَّةِ أَيَّامٖ ثُمَّ ٱسۡتَوَىٰ عَلَى ٱلۡعَرۡشِۖ يُدَبِّرُ ٱلۡأَمۡرَۖ مَا مِن شَفِيعٍ إِلَّا مِنۢ بَعۡدِ إِذۡنِهِۦۚ ذَٰلِكُمُ ٱللَّهُ رَبُّكُمۡ فَٱعۡبُدُوهُۚ أَفَلَا تَذَكَّرُونَ ٣

4. ನಿಮ್ಮೆಲ್ಲರನ್ನು ಅವನ ಬಳಿಗೇ ಮರಳಿಸಲಾಗುವುದು. ಇದು ಅಲ್ಲಾಹನ ಸತ್ಯ ವಾಗ್ದಾನವಾಗಿದೆ. ನಿಶ್ಚಯವಾಗಿಯೂ ಅವನು ಪ್ರಥಮ ಬಾರಿ ಸೃಷ್ಟಿಸುತ್ತಾನೆ. ನಂತರ ಸತ್ಯವಿಶ್ವಾಸಿಗಳಿಗೆ ಮತ್ತು ಸತ್ಕರ್ಮವೆಸಗಿದವರಿಗೆ ನ್ಯಾಯಯುತವಾದ ಪ್ರತಿಫಲವನ್ನು ನೀಡಲು ಆ ಸೃಷ್ಟಿಯನ್ನು ಪುನರಾವರ್ತಿಸುತ್ತಾನೆ. ಸತ್ಯವನ್ನು ನಿಷೇಧಿಸಿದವರು ಯಾರೋ—ಅವರು ಸತ್ಯವನ್ನು ನಿಷೇಧಿಸಿದ್ದಕ್ಕಾಗಿ ಅವರಿಗೆ ಕುದಿಯುವ ಪಾನೀಯ ಮತ್ತು ಯಾತನಾಮಯ ಶಿಕ್ಷೆಯಿದೆ.

إِلَيۡهِ مَرۡجِعُكُمۡ جَمِيعٗاۖ وَعۡدَ ٱللَّهِ حَقًّاۚ إِنَّهُۥ يَبۡدَؤُاْ ٱلۡخَلۡقَ ثُمَّ يُعِيدُهُۥ لِيَجۡزِيَ ٱلَّذِينَ ءَامَنُواْ وَعَمِلُواْ ٱلصَّٰلِحَٰتِ بِٱلۡقِسۡطِۚ وَٱلَّذِينَ كَفَرُواْ لَهُمۡ شَرَابٞ مِّنۡ حَمِيمٖ وَعَذَابٌ أَلِيمُۢ بِمَا كَانُواْ يَكۡفُرُونَ ٤

5. ಸೂರ್ಯನನ್ನು ಹೊಳೆಯುವ ಪ್ರಕಾಶ ಮತ್ತು ಚಂದ್ರನನ್ನು ಬೆಳಕನ್ನಾಗಿ ಮಾಡಿದವನು ಅವನೇ. ನೀವು ವರ್ಷಗಳ ಸಂಖ್ಯೆ

هُوَ ٱلَّذِي جَعَلَ ٱلشَّمۡسَ ضِيَآءٗ وَٱلۡقَمَرَ نُورٗا وَقَدَّرَهُۥ مَنَازِلَ لِتَعۡلَمُواْ عَدَدَ ٱلسِّنِينَ

وَٱلۡحِسَابَۚ مَا خَلَقَ ٱللَّهُ ذَٰلِكَ إِلَّا بِٱلۡحَقِّۚ يُفَصِّلُ ٱلۡأٓيَٰتِ لِقَوۡمٖ يَعۡلَمُونَ ٥

ಮತ್ತು ಲೆಕ್ಕವನ್ನು ತಿಳಿಯಲು ಅವನು ಅದಕ್ಕೆ (ಚಂದ್ರನಿಗೆ) ಕೆಲವು ಹಂತಗಳನ್ನು ನಿರ್ಣಯಿಸಿದನು. ಅಲ್ಲಾಹು ಅವುಗಳನ್ನು ಉದ್ದೇಶರಹಿತವಾಗಿ ಸೃಷ್ಟಿಸಿಲ್ಲ. ತಿಳುವಳಿಕೆಯಿರುವ ಜನರಿಗಾಗಿ ಅವನು ದೃಷ್ಟಾಂತಗಳನ್ನು ವಿವರಿಸಿಕೊಡುತ್ತಾನೆ.

---

إِنَّ فِي ٱخۡتِلَٰفِ ٱلَّيۡلِ وَٱلنَّهَارِ وَمَا خَلَقَ ٱللَّهُ فِي ٱلسَّمَٰوَٰتِ وَٱلۡأَرۡضِ لَأٓيَٰتٖ لِّقَوۡمٖ يَتَّقُونَ ٦

6. ನಿಶ್ಚಯವಾಗಿಯೂ ರಾತ್ರಿ-ಹಗಲುಗಳ ಬದಲಾವಣೆಯಲ್ಲಿ ಮತ್ತು ಭೂಮ್ಯಾಕಾಶಗಳಲ್ಲಿ ಅಲ್ಲಾಹು ಸೃಷ್ಟಿಸಿದ ವಸ್ತುಗಳಲ್ಲಿ ದೇವಭಯವುಳ್ಳ ಜನರಿಗೆ ಅನೇಕ ದೃಷ್ಟಾಂತಗಳಿವೆ.

---

إِنَّ ٱلَّذِينَ لَا يَرۡجُونَ لِقَآءَنَا وَرَضُواْ بِٱلۡحَيَوٰةِ ٱلدُّنۡيَا وَٱطۡمَأَنُّواْ بِهَا وَٱلَّذِينَ هُمۡ عَنۡ ءَايَٰتِنَا غَٰفِلُونَ ٧

7. ನಿಶ್ಚಯವಾಗಿಯೂ ನಮ್ಮನ್ನು ಭೇಟಿಯಾಗುವ ವಿಷಯದಲ್ಲಿ ನಂಬಿಕೆಯಿಲ್ಲದವರು, ಇಹಲೋಕ ಜೀವನವನ್ನೇ ನೆಚ್ಚಿ, ಅದರಲ್ಲೇ ನೆಮ್ಮದಿಯನ್ನು ಬಯಸುವವರು ಮತ್ತು ನಮ್ಮ ದೃಷ್ಟಾಂತಗಳ ಬಗ್ಗೆ ಅಜ್ಞರಾಗಿರುವವರು.

---

أُوْلَٰٓئِكَ مَأۡوَىٰهُمُ ٱلنَّارُ بِمَا كَانُواْ يَكۡسِبُونَ ٨

8. ಅವರು ಮಾಡಿದ ದುಷ್ಕರ್ಮಗಳ ಫಲವಾಗಿ ಅವರ ವಾಸಸ್ಥಳವು ನರಕವಾಗಿದೆ.

---

إِنَّ ٱلَّذِينَ ءَامَنُواْ وَعَمِلُواْ ٱلصَّٰلِحَٰتِ يَهۡدِيهِمۡ رَبُّهُم بِإِيمَٰنِهِمۡۖ تَجۡرِي مِن تَحۡتِهِمُ ٱلۡأَنۡهَٰرُ فِي جَنَّٰتِ ٱلنَّعِيمِ ٩

9. ನಿಶ್ಚಯವಾಗಿಯೂ ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ—ಅವರ ವಿಶ್ವಾಸದ ಕಾರಣದಿಂದಾಗಿ ಅವರ ಪರಿಪಾಲಕನು (ಅಲ್ಲಾಹು) ಅವರಿಗೆ ಸನ್ಮಾರ್ಗವನ್ನು ತೋರಿಸುವನು. ಅವರು ತಮ್ಮ ತಳಭಾಗದಿಂದ ನದಿಗಳು ಹರಿಯುವ ಸುಖ-ಸಮೃದ್ಧವಾದ ಸ್ವರ್ಗೋದ್ಯಾನಗಳಲ್ಲಿ ವಾಸಿಸುವರು.

---

دَعۡوَىٰهُمۡ فِيهَا سُبۡحَٰنَكَ ٱللَّهُمَّ وَتَحِيَّتُهُمۡ فِيهَا سَلَٰمٞۚ وَءَاخِرُ دَعۡوَىٰهُمۡ أَنِ ٱلۡحَمۡدُ لِلَّهِ رَبِّ ٱلۡعَٰلَمِينَ ١٠

10. ಅಲ್ಲಿ ಅವರ ಪ್ರಾರ್ಥನೆಯು, "ಓ ಅಲ್ಲಾಹ್! ನಿನ್ನ ಪರಿಶುದ್ಧತೆಯನ್ನು ನಾವು ಕೊಂಡಾಡುತ್ತೇವೆ" ಎಂದಾಗಿರುವುದು; ಅಲ್ಲಿ ಅವರ ಅಭಿವಂದನೆಯು, "ಅಸ್ಸಲಾಂ ಅಲೈಕುಂ" (ನಿಮ್ಮ ಮೇಲೆ ಶಾಂತಿಯಿರಲಿ) ಎಂದಾಗಿರುವುದು ಮತ್ತು ಅವರ ಕೊನೆಯ ಪ್ರಾರ್ಥನೆಯು, "ಸರ್ವಲೋಕಗಳ ಪರಿಪಾಲಕನಾದ ಅಲ್ಲಾಹನಿಗೆ ಸರ್ವಸ್ತುತಿ" ಎಂದಾಗಿರುವುದು.

---

وَلَوۡ يُعَجِّلُ ٱللَّهُ لِلنَّاسِ ٱلشَّرَّ ٱسۡتِعۡجَالَهُم بِٱلۡخَيۡرِ لَقُضِيَ إِلَيۡهِمۡ أَجَلُهُمۡۖ فَنَذَرُ ٱلَّذِينَ لَا يَرۡجُونَ لِقَآءَنَا فِي طُغۡيَٰنِهِمۡ يَعۡمَهُونَ ١١

11. ಜನರು ಬೇಡುವ ಪ್ರಯೋಜನಗಳನ್ನು ನೀಡಲು ಅಲ್ಲಾಹು ತ್ವರೆ ಮಾಡುವಂತೆ, ಅವರು ಬೇಡುವ ಶಿಕ್ಷೆಗಳನ್ನು ನೀಡಲು ಕೂಡ ತ್ವರೆ ಮಾಡುತ್ತಿದ್ದರೆ ಅವರ ಜೀವಿತಾವಧಿಯು ಎಂದೋ ಮುಗಿದುಹೋಗುತ್ತಿತ್ತು. ನಮ್ಮನ್ನು ಭೇಟಿಯಾಗುವ ವಿಷಯದಲ್ಲಿ ನಂಬಿಕೆಯಿಲ್ಲದವರನ್ನು ನಾವು ಅವರ ಅತಿರೇಕಗಳೊಂದಿಗೆ ಅಂಧವಾಗಿ ವಿಹರಿಸಲು ಬಿಟ್ಟುಬಿಡುವೆವು.

12. ಮನುಷ್ಯನಿಗೆ ಕಷ್ಟ ಬಂದಾಗ ಅವನು ಪಾರ್ಶ್ವಕ್ಕೆ ಸರಿದು ಮಲಗಿಕೊಂಡು, ಕುಳಿತುಕೊಂಡು ಅಥವಾ ನಿಂತುಕೊಂಡು ನಮ್ಮನ್ನು (ಪದೇ ಪದೇ) ಕರೆದು ಪ್ರಾರ್ಥಿಸುತ್ತಾನೆ. ಆದರೆ ನಾವು ಅವನ ಕಷ್ಟವನ್ನು ನಿವಾರಿಸಿದಾಗ, ತನಗೆ ಬಂದ ಕಷ್ಟವನ್ನು ನಿವಾರಿಸಲು ಅವನು ನಮ್ಮನ್ನು ಕರೆಯಲೇ ಇಲ್ಲ ಎಂಬಂತೆ ಸಾಗಿಬಿಡುತ್ತಾನೆ. ಈ ರೀತಿ ಅತಿರೇಕಿಗಳಿಗೆ ಅವರು ಮಾಡುವ ಕರ್ಮಗಳನ್ನು ಅಲಂಕರಿಸಿಕೊಡಲಾಗಿದೆ.

وَإِذَا مَسَّ ٱلْإِنسَٰنَ ٱلضُّرُّ دَعَانَا لِجَنۢبِهِۦٓ أَوْ
قَاعِدًا أَوْ قَآئِمًا فَلَمَّا كَشَفْنَا عَنْهُ ضُرَّهُۥ مَرَّ
كَأَن لَّمْ يَدْعُنَآ إِلَىٰ ضُرٍّ مَّسَّهُۥ ۚ كَذَٰلِكَ زُيِّنَ
لِلْمُسْرِفِينَ مَا كَانُوا۟ يَعْمَلُونَ ﴿١٢﴾

13. ನಿಶ್ಚಯವಾಗಿಯೂ ನಿಮಗಿಂತ ಮೊದಲಿನ ಅನೇಕ ತಲೆಮಾರುಗಳು ಅಕ್ರಮವೆಸಗಿದಾಗ ನಾವು ಅವರನ್ನು ನಾಶ ಮಾಡಿದೆವು. ನಮ್ಮ ಸಂದೇಶವಾಹಕರು ಸ್ಪಷ್ಟ ಸಾಕ್ಷ್ಯಾಧಾ-ರಗಳೊಂದಿಗೆ ಅವರ ಬಳಿಗೆ ಬಂದಿದ್ದರು. ಆದರೂ ಅವರು ವಿಶ್ವಾಸವಿಡಲಿಲ್ಲ. ಅಪರಾಧಿಗಳಾದ ಜನರಿಗೆ ಈ ರೀತಿ ನಾವು ಪ್ರತಿಫಲವನ್ನು ನೀಡುವೆವು.

وَلَقَدْ أَهْلَكْنَا ٱلْقُرُونَ مِن قَبْلِكُمْ لَمَّا ظَلَمُوا۟
وَجَآءَتْهُمْ رُسُلُهُم بِٱلْبَيِّنَٰتِ وَمَا كَانُوا۟ لِيُؤْمِنُوا۟ ۚ
كَذَٰلِكَ نَجْزِى ٱلْقَوْمَ ٱلْمُجْرِمِينَ ﴿١٣﴾

14. ನಂತರ ಅವರ ಬಳಿಕ ನಾವು ನಿಮ್ಮನ್ನು ಭೂಮಿಯಲ್ಲಿ ಉತ್ತರಾ-ಧಿಕಾರಿಗಳನ್ನಾಗಿ ಮಾಡಿದೆವು. ನೀವು ಹೇಗೆ ಕರ್ಮವೆಸಗುತ್ತೀರಿ ಎಂದು ನೋಡಲು.

ثُمَّ جَعَلْنَٰكُمْ خَلَٰٓئِفَ فِى ٱلْأَرْضِ مِنۢ
بَعْدِهِمْ لِنَنظُرَ كَيْفَ تَعْمَلُونَ ﴿١٤﴾

15. ಅವರಿಗೆ ನಮ್ಮ ಸ್ಪಷ್ಟ ವಚನಗಳನ್ನು ಓದಿಕೊಡಲಾದರೆ, ನಮ್ಮನ್ನು ಭೇಟಿಯಾಗುವ ವಿಷಯದಲ್ಲಿ ನಂಬಿಕೆಯಿಲ್ಲದವರು ಹೇಳುತ್ತಾರೆ: "ಇದು ಬೇಡ, ನಮಗೆ ಇದಲ್ಲದ ಬೇರೊಂದು ಕುರ್‌ಆನನ್ನು ತಂದು ಕೊಡಿ, ಅಥವಾ ಇದರಲ್ಲಿ ಕೆಲವು ಬದಲಾವಣೆಗಳನ್ನು ಮಾಡಿರಿ." ಹೇಳಿರಿ: "ಇದರಲ್ಲಿ ನನ್ನ ಕಡೆಯಿಂದ ಯಾವುದೇ ಬದಲಾವಣೆ ಮಾಡುವ ಹಕ್ಕು ನನಗಿಲ್ಲ. ನನಗೆ ನೀಡಲಾಗುವ ದೇವವಾಣಿಗಳನ್ನು ಮಾತ್ರ ನಾನು ಅನುಸರಿಸುತ್ತೇನೆ. ನಾನೇನಾದರೂ ನನ್ನ ಪರಿಪಾಲಕನ (ಅಲ್ಲಾಹನ) ಆಜ್ಞೆಗಳನ್ನು ಉಲ್ಲಂಘಿಸಿದರೆ, ನಿಶ್ಚಯವಾಗಿಯೂ ಒಂದು ಭಯಾನಕ ದಿನದ ಶಿಕ್ಷೆಯನ್ನು ನಾನು ಭಯಪಡುತ್ತೇನೆ."

وَإِذَا تُتْلَىٰ عَلَيْهِمْ ءَايَاتُنَا بَيِّنَٰتٍ قَالَ ٱلَّذِينَ
لَا يَرْجُونَ لِقَآءَنَا ٱئْتِ بِقُرْءَانٍ غَيْرِ هَٰذَآ أَوْ
بَدِّلْهُ ۚ قُلْ مَا يَكُونُ لِىٓ أَنْ أُبَدِّلَهُۥ مِن تِلْقَآئِ
نَفْسِىٓ ۖ إِنْ أَتَّبِعُ إِلَّا مَا يُوحَىٰٓ إِلَىَّ ۖ إِنِّىٓ أَخَافُ إِنْ
عَصَيْتُ رَبِّى عَذَابَ يَوْمٍ عَظِيمٍ ﴿١٥﴾

16. ಹೇಳಿರಿ: "ಅಲ್ಲಾಹು ಇಚ್ಛಿಸಿದ್ದರೆ ನಾನು ಇದನ್ನು ನಿಮಗೆ ಓದಿಕೊಡುತ್ತಿರಲಿಲ್ಲ ಮತ್ತು ಇದು ನಿಮಗೆ ತಿಳಿಯುವಂತೆ ಅವನು ಮಾಡುತ್ತಲೂ ಇರಲಿಲ್ಲ. ನಾನು ಇದಕ್ಕೆ ಮೊದಲು ಅನೇಕ ವರ್ಷಗಳ ಕಾಲ ನಿಮ್ಮೊಂದಿಗೆ ಬದುಕಿದ್ದೆ. ನೀವು ಅರ್ಥಮಾಡಿಕೊಳ್ಳುವುದಿಲ್ಲವೇ?"

قُل لَّوْ شَآءَ ٱللَّهُ مَا تَلَوْتُهُۥ عَلَيْكُمْ وَلَآ
أَدْرَىٰكُم بِهِۦ ۖ فَقَدْ لَبِثْتُ فِيكُمْ عُمُرًا مِّن
قَبْلِهِۦٓ ۚ أَفَلَا تَعْقِلُونَ ﴿١٦﴾

17. ಅಲ್ಲಾಹನ ಮೇಲೆ ಸುಳ್ಳು ಆರೋಪಿಸುವವನಿಗಿಂತ ಅಥವಾ

فَمَنْ أَظْلَمُ مِمَّنِ ٱفْتَرَىٰ عَلَى ٱللَّهِ كَذِبًا أَوْ

كَذَّبَ بِـَٔايَٰتِهِۦٓۚ إِنَّهُۥ لَا يُفۡلِحُ ٱلۡمُجۡرِمُونَ ١٧

ಅವನ ವಚನಗಳನ್ನು ನಿಷೇಧಿಸುವವನಿಗಿಂತ ದೊಡ್ಡ ಅಕ್ರಮಿ ಯಾರು? ನಿಶ್ಚಯವಾಗಿಯೂ ಅಪರಾಧಿಗಳು ಯಶಸ್ವಿಯಾಗುವುದಿಲ್ಲ.

---

وَيَعۡبُدُونَ مِن دُونِ ٱللَّهِ مَا لَا يَضُرُّهُمۡ وَلَا يَنفَعُهُمۡ وَيَقُولُونَ هَٰٓؤُلَآءِ شُفَعَٰٓؤُنَا عِندَ ٱللَّهِۚ قُلۡ أَتُنَبِّـُٔونَ ٱللَّهَ بِمَا لَا يَعۡلَمُ فِي ٱلسَّمَٰوَٰتِ وَلَا فِي ٱلۡأَرۡضِۚ سُبۡحَٰنَهُۥ وَتَعَٰلَىٰ عَمَّا يُشۡرِكُونَ ١٨

18. ಅವರು ಅಲ್ಲಾಹನನ್ನು ಬಿಟ್ಟು ಅವರಿಗೆ ಯಾವುದೇ ಉಪಕಾರ ಅಥವಾ ತೊಂದರೆ ಮಾಡದವರನ್ನು ಆರಾಧಿಸುತ್ತಾರೆ. ಅವರು ಹೇಳುತ್ತಾರೆ: "ಇವರು ಅಲ್ಲಾಹನ ಬಳಿ ನಮಗೆ ಶಿಫಾರಸು ಮಾಡುತ್ತಾರೆ." ಕೇಳಿರಿ: "ಭೂಮ್ಯಾಕಾಶಗಳಲ್ಲಿ ಅಲ್ಲಾಹನಿಗೆ ತಿಳಿಯದೇ ಇರುವ ಒಂದು ವಿಷಯವನ್ನು ನೀವು ಅವನಿಗೆ ತಿಳಿಸುತ್ತಿದ್ದೀರಾ?"[1] ಅವರು ಮಾಡುವ ಸಹಭಾಗಿತ್ವ (ಶಿರ್ಕ್) ದಿಂದ ಅವನು ಎಷ್ಟೋ ಪರಿಶುದ್ಧನು ಮತ್ತು ಉನ್ನತನಾಗಿದ್ದಾನೆ.

---

وَمَا كَانَ ٱلنَّاسُ إِلَّآ أُمَّةٗ وَٰحِدَةٗ فَٱخۡتَلَفُواْۚ وَلَوۡلَا كَلِمَةٞ سَبَقَتۡ مِن رَّبِّكَ لَقُضِيَ بَيۡنَهُمۡ فِيمَا فِيهِ يَخۡتَلِفُونَ ١٩

19. ಮನುಷ್ಯರೆಲ್ಲರೂ ಒಂದೇ ಸಮುದಾಯವಾಗಿದ್ದರು. ನಂತರ ಅವರಲ್ಲಿ ಭಿನ್ನಮತ ಉಂಟಾಯಿತು. ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಮೊದಲೇ ನಿಶ್ಚಯಿಸಲಾದ ಒಂದು ಮಾತು ಇಲ್ಲದಿರುತ್ತಿದ್ದರೆ, ಯಾವ ವಿಷಯದಲ್ಲಿ ಅವರು ಭಿನ್ನರಾದರೋ ಅದರ ಬಗ್ಗೆ ಈಗಾಗಲೇ ತೀರ್ಪು ನೀಡಲಾಗುತ್ತಿತ್ತು.

---

وَيَقُولُونَ لَوۡلَآ أُنزِلَ عَلَيۡهِ ءَايَةٞ مِّن رَّبِّهِۦۖ فَقُلۡ إِنَّمَا ٱلۡغَيۡبُ لِلَّهِ فَٱنتَظِرُوٓاْ إِنِّي مَعَكُم مِّنَ ٱلۡمُنتَظِرِينَ ٢٠

20. ಅವರು ಕೇಳುತ್ತಾರೆ: "ಅವರಿಗೆ (ಪ್ರವಾದಿಗೆ) ಅವರ ಪರಿಪಾಲಕನಿಂದ (ಅಲ್ಲಾಹನಿಂದ) ಒಂದು ದೃಷ್ಟಾಂತವೇಕೆ ಇಳಿಸಿಕೊಡಲಾಗಿಲ್ಲ?" ಹೇಳಿರಿ: "ಅದೃಶ್ಯಗಳ ಬಗ್ಗೆ ತಿಳಿದವನು ಅಲ್ಲಾಹು ಮಾತ್ರ. ನೀವು ಕಾಯಿರಿ. ನಿಶ್ಚಯವಾಗಿಯೂ ನಾನು ಕೂಡ ನಿಮ್ಮೊಂದಿಗೆ ಕಾಯುವೆನು."

---

وَإِذَآ أَذَقۡنَا ٱلنَّاسَ رَحۡمَةٗ مِّنۢ بَعۡدِ ضَرَّآءَ مَسَّتۡهُمۡ إِذَا لَهُم مَّكۡرٞ فِيٓ ءَايَاتِنَاۚ قُلِ ٱللَّهُ أَسۡرَعُ مَكۡرًاۚ إِنَّ رُسُلَنَا يَكۡتُبُونَ مَا تَمۡكُرُونَ ٢١

21. ಜನರಿಗೆ ಕಷ್ಟ ಬಂದ ಬಳಿಕ ನಾವು ಅವರಿಗೆ ನಮ್ಮ ದಯೆಯ ರುಚಿಯನ್ನು ತೋರಿಸಿದರೆ, ಅಗೋ ಅವರು ನಮ್ಮ ವಚನಗಳ ವಿರುದ್ಧ ಪಿತೂರಿ ಮಾಡುತ್ತಾರೆ. ಹೇಳಿರಿ: "ಅಲ್ಲಾಹು ನಿಮಗಿಂತಲೂ ವೇಗವಾಗಿ ತಂತ್ರಗಾರಿಕೆ ಮಾಡುತ್ತಾನೆ. ನಿಶ್ಚಯವಾಗಿಯೂ ನೀವು ಮಾಡುವ ಪಿತೂರಿಗಳನ್ನು ನಮ್ಮ ದೇವದೂತರು ದಾಖಲಿಸುತ್ತಿದ್ದಾರೆ."

---

هُوَ ٱلَّذِي يُسَيِّرُكُمۡ فِي ٱلۡبَرِّ وَٱلۡبَحۡرِۖ حَتَّىٰٓ إِذَا كُنتُمۡ فِي ٱلۡفُلۡكِ وَجَرَيۡنَ بِهِم بِرِيحٖ طَيِّبَةٖ وَفَرِحُواْ بِهَا جَآءَتۡهَا رِيحٌ عَاصِفٞ وَجَآءَهُمُ

22. ನಿಮ್ಮನ್ನು ನೆಲದಲ್ಲಿ ಮತ್ತು ಕಡಲಲ್ಲಿ ಸಂಚರಿಸುವಂತೆ ಮಾಡುವವನು ಅವನೇ. ಎಲ್ಲಿಯವರೆಗೆಂದರೆ, ನೀವೊಂದು ನಾವೆಯಲ್ಲಿದ್ದು, ಉತ್ತಮ ಹವೆಯಿಂದಾಗಿ ಅವು ಯಾತ್ರಿಕರನ್ನು ಹೊತ್ತು ಚಲಿಸುತ್ತಿರುವಾಗ ಮತ್ತು ನೀವು

---

[1] ಅಲ್ಲಾಹನ ಬಳಿ ಶಿಫಾರಸು ಮಾಡಿ ನಿಮ್ಮನ್ನು ಅವನ ಶಿಕ್ಷೆಯಿಂದ ಪಾರು ಮಾಡುವವರು ಯಾರಾದರೂ ಇದ್ದರೆ ಅವನು ಯಾರೆಂದು ಅಲ್ಲಾಹನಿಗೆ ತಿಳಿದಿರಲೇಬೇಕು. ಏಕೆಂದರೆ ಭೂಮ್ಯಾಕಾಶಗಳಲ್ಲಿರುವ ಎಲ್ಲವೂ ಅಲ್ಲಾಹನಿಗೆ ತಿಳಿದಿದೆ.

ತುಂಬಾ ಸಂಭ್ರಮದಲ್ಲಿರುವಾಗ, ಇದ್ದಕ್ಕಿದ್ದಂತೆ ಒಂದು ಭೀಕರ ಬಿರುಗಾಳಿಯು ಬೀಸಿ, ಎಲ್ಲಾ ದಿಕ್ಕುಗಳಿಂದಲೂ ಹೆದ್ದೆರೆಗಳು ಎದ್ದು, ಸಾವು ತಮ್ಮನ್ನು ಆವರಿಸಿಕೊಂಡಿದೆಯೆಂದು ಅವರಿಗೆ ಖಾತ್ರಿಯಾದಾಗ, ಅವರು ಸಂಪೂರ್ಣ ನಿಷ್ಕಳಂಕತೆಯಿಂದ ಅಲ್ಲಾಹನನ್ನು ಕರೆದು ಪ್ರಾರ್ಥಿಸುತ್ತಾರೆ: "ನೀನು ನಮ್ಮನ್ನು ಇದರಿಂದ ಪಾರು ಮಾಡಿದರೆ ನಿಶ್ಚಯವಾಗಿಯೂ ನಾವು ನಿನಗೆ ಆಭಾರಿಯಾಗಿರುತ್ತೇವೆ."

ٱلۡمَوۡجُ مِن كُلِّ مَكَانٖ وَظَنُّوٓاْ أَنَّهُمۡ أُحِيطَ بِهِمۡ دَعَوُاْ ٱللَّهَ مُخۡلِصِينَ لَهُ ٱلدِّينَ لَئِنۡ أَنجَيۡتَنَا مِنۡ هَٰذِهِۦ لَنَكُونَنَّ مِنَ ٱلشَّٰكِرِينَ ﴿٢٢﴾

---

23. ಆದರೆ ಅವನು ಅವರನ್ನು ಪಾರು ಮಾಡಿದಾಗ, ಅಗೋ ಅವರು ಅನ್ಯಾಯವಾಗಿ ಭೂಮಿಯಲ್ಲಿ ಅತಿರೇಕವೆಸಗುತ್ತಾರೆ. ಓ ಮನುಷ್ಯರೇ! ನೀವು ಮಾಡುವ ಅತಿರೇಕಗಳ ದುಷ್ಫಲವನ್ನು ನೀವೇ ಉಣ್ಣುತ್ತೀರಿ. ಅವು ಇಹಲೋಕದ ಕೆಲವು ಆನಂದಗಳು ಮಾತ್ರ. ನಂತರ ನಿಮ್ಮನ್ನು ನಮ್ಮ ಬಳಿಗೆ ಮರಳಿಸಲಾಗುವುದು. ಆಗ ನೀವು ಮಾಡಿದ ಕರ್ಮಗಳನ್ನು ನಾವು ನಿಮಗೆ ತಿಳಿಸಿಕೊಡುವೆವು.

فَلَمَّآ أَنجَىٰهُمۡ إِذَا هُمۡ يَبۡغُونَ فِي ٱلۡأَرۡضِ بِغَيۡرِ ٱلۡحَقِّۗ يَٰٓأَيُّهَا ٱلنَّاسُ إِنَّمَا بَغۡيُكُمۡ عَلَىٰٓ أَنفُسِكُمۖ مَّتَٰعَ ٱلۡحَيَوٰةِ ٱلدُّنۡيَاۖ ثُمَّ إِلَيۡنَا مَرۡجِعُكُمۡ فَنُنَبِّئُكُم بِمَا كُنتُمۡ تَعۡمَلُونَ ﴿٢٣﴾

---

24. ಇಹಲೋಕದ ಉದಾಹರಣೆಯು ಒಂದು ಮಳೆಯಂತೆ. ನಾವು ಅದನ್ನು ಆಕಾಶದಿಂದ ಇಳಿಸಿದೆವು. ಆಗ ಅದರೊಂದಿಗೆ ಭೂಮಿಯಲ್ಲಿ ಮನುಷ್ಯರು ಮತ್ತು ಜಾನುವಾರುಗಳು ತಿನ್ನುವ ಸಸ್ಯಲತಾದಿಗಳು ಬೆರೆತು ಬೆಳೆದವು. ಎಲ್ಲಿಯವರೆಗೆಂದರೆ, ಭೂಮಿ ತನ್ನ ಶೃಂಗಾರವನ್ನು ಧರಿಸಿ ಅಲಂಕಾರದಿಂದ ಕಂಗೊಳಿಸಿದಾಗ ಮತ್ತು ಭೂಮಿಯನ್ನು ನಿಯಂತ್ರಿಸುವ ಸಾಮರ್ಥ್ಯ ನಮಗಿದೆಯೆಂದು ಭೂನಿವಾಸಿಗಳು ಭಾವಿಸಿದಾಗ, ಒಂದು ರಾತ್ರಿಯಲ್ಲಿ ಅಥವಾ ಹಗಲಲ್ಲಿ ನಮ್ಮ ಆಜ್ಞೆಯು ಅದಕ್ಕೆ ಬಂದುಬಿಟ್ಟಿತು. ಆಗ ನಿನ್ನೆ ಅಲ್ಲಿ ಏನೂ ಇರಲಿಲ್ಲವೋ ಎಂಬಂತೆ ನಾವು ಅವುಗಳನ್ನು ಸಂಪೂರ್ಣ ನಾಶ ಮಾಡಿದೆವು. ಆಲೋಚಿಸುವ ಜನರಿಗೆ ನಾವು ಈ ರೀತಿಯಲ್ಲಿ ದೃಷ್ಟಾಂತಗಳನ್ನು ವಿವರಿಸಿಕೊಡುವೆವು.

إِنَّمَا مَثَلُ ٱلۡحَيَوٰةِ ٱلدُّنۡيَا كَمَآءٍ أَنزَلۡنَٰهُ مِنَ ٱلسَّمَآءِ فَٱخۡتَلَطَ بِهِۦ نَبَاتُ ٱلۡأَرۡضِ مِمَّا يَأۡكُلُ ٱلنَّاسُ وَٱلۡأَنۡعَٰمُ حَتَّىٰٓ إِذَآ أَخَذَتِ ٱلۡأَرۡضُ زُخۡرُفَهَا وَٱزَّيَّنَتۡ وَظَنَّ أَهۡلُهَآ أَنَّهُمۡ قَٰدِرُونَ عَلَيۡهَآ أَتَىٰهَآ أَمۡرُنَا لَيۡلًا أَوۡ نَهَارٗا فَجَعَلۡنَٰهَا حَصِيدٗا كَأَن لَّمۡ تَغۡنَ بِٱلۡأَمۡسِۚ كَذَٰلِكَ نُفَصِّلُ ٱلۡأٓيَٰتِ لِقَوۡمٖ يَتَفَكَّرُونَ ﴿٢٤﴾

---

25. ಅಲ್ಲಾಹು ಶಾಂತಿಯ ಭವನಕ್ಕೆ ಕರೆಯುತ್ತಿದ್ದಾನೆ. ಅವನು ಇಚ್ಛಿಸುವವರಿಗೆ ಅವನು ನೇರ ಮಾರ್ಗವನ್ನು ತೋರಿಸುತ್ತಾನೆ.

وَٱللَّهُ يَدۡعُوٓاْ إِلَىٰ دَارِ ٱلسَّلَٰمِ وَيَهۡدِي مَن يَشَآءُ إِلَىٰ صِرَٰطٖ مُّسۡتَقِيمٖ ﴿٢٥﴾

---

26. ಒಳಿತು ಮಾಡಿದವರಿಗೆ ಅತ್ಯುತ್ತಮ ಪ್ರತಿಫಲವಿದೆ ಮತ್ತು ಹೆಚ್ಚಳವೂ[1] ಇದೆ. ಅವರ ಮುಖಗಳನ್ನು ಅಂಧಕಾರ ಮತ್ತು

۞لِّلَّذِينَ أَحۡسَنُواْ ٱلۡحُسۡنَىٰ وَزِيَادَةٞۖ وَلَا يَرۡهَقُ وُجُوهَهُمۡ قَتَرٞ وَلَا ذِلَّةٌۚ أُوْلَٰٓئِكَ أَصۡحَٰبُ ٱلۡجَنَّةِۖ

---

[1] ಇಲ್ಲಿ ಹೆಚ್ಚಳವೆಂದು ಹೇಳಿರುವುದು ಅಲ್ಲಾಹನ ಆದರಣೀಯ ಮುಖದರ್ಶನವಾಗಿದೆ. ಸ್ವರ್ಗದಲ್ಲಿ ಸತ್ಯವಿಶ್ವಾಸಿಗಳು ಅಲ್ಲಾಹನನ್ನು ನೇರವಾಗಿ ನೋಡುವರು.

ಅಪಮಾನವು ಆವರಿಸುವುದಿಲ್ಲ. ಅವರೇ ಸ್ವರ್ಗವಾಸಿಗಳು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು.

هُمۡ فِيهَا خَٰلِدُونَ ٢٦

---

27. ಕೆಡುಕುಗಳನ್ನು ಮಾಡಿದವರು ಯಾರೋ—ಅವರ ಕೆಡುಕಿಗೆ ಸಮಾನವಾದ ಶಿಕ್ಷೆಯು ಅವರಿಗೆ ದೊರೆಯಲಿದೆ ಮತ್ತು ಅಪಮಾನವು ಅವರನ್ನು ಆವರಿಸಲಿದೆ. ಅಲ್ಲಾಹನ ಶಿಕ್ಷೆಯಿಂದ ಅವರನ್ನು ರಕ್ಷಿಸುವವರು ಯಾರೂ ಇಲ್ಲ. ಕಾರ್ಗತ್ತಲ ರಾತ್ರಿಯ ತುಣುಕುಗಳು ಅವರ ಮುಖಗಳನ್ನು ಆವರಿಸಿಕೊಂಡಿದೆಯೋ ಎಂಬಂತೆ (ಅವರು ಕಪ್ಪಾಗಿರುವರು). ಅವರೇ ನರಕವಾಸಿಗಳು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು.

وَٱلَّذِينَ كَسَبُواْ ٱلسَّيِّـَٔاتِ جَزَآءُ سَيِّئَةِۭ بِمِثۡلِهَا وَتَرۡهَقُهُمۡ ذِلَّةٞۖ مَّا لَهُم مِّنَ ٱللَّهِ مِنۡ عَاصِمٖۖ كَأَنَّمَآ أُغۡشِيَتۡ وُجُوهُهُمۡ قِطَعٗا مِّنَ ٱلَّيۡلِ مُظۡلِمًاۚ أُوْلَٰٓئِكَ أَصۡحَٰبُ ٱلنَّارِۖ هُمۡ فِيهَا خَٰلِدُونَ ٢٧

---

28. ನಾವು ಅವರೆಲ್ಲರನ್ನೂ ಒಟ್ಟುಗೂಡಿಸುವ ದಿನ. ನಂತರ ನಾವು ಬಹುದೇವಾರಾಧಕರೊಡನೆ ಹೇಳುವೆವು: "ನೀವು ಮತ್ತು ನಿಮ್ಮ ಸಹಭಾಗಿಗಳು (ದೇವರುಗಳು) ಅಲ್ಲೇ ನಿಲ್ಲಿರಿ." ನಂತರ ನಾವು ಅವರನ್ನು ಬೇರ್ಪಡಿಸುವೆವು. ಆಗ ಅವರ ಸಹಭಾಗಿಗಳು (ದೇವರುಗಳು) ಅವರೊಡನೆ ಹೇಳುವರು: "ನೀವು ನಮ್ಮನ್ನು ಆರಾಧಿಸುತ್ತಿರಲಿಲ್ಲ.

وَيَوۡمَ نَحۡشُرُهُمۡ جَمِيعٗا ثُمَّ نَقُولُ لِلَّذِينَ أَشۡرَكُواْ مَكَانَكُمۡ أَنتُمۡ وَشُرَكَآؤُكُمۡۚ فَزَيَّلۡنَا بَيۡنَهُمۡۖ وَقَالَ شُرَكَآؤُهُم مَّا كُنتُمۡ إِيَّانَا تَعۡبُدُونَ ٢٨

---

29. ನಮ್ಮ ಮತ್ತು ನಿಮ್ಮ ನಡುವೆ ಸಾಕ್ಷಿಯಾಗಿ ಅಲ್ಲಾಹು ಸಾಕು. ನೀವು ಮಾಡುತ್ತಿದ್ದ ಆರಾಧನೆಯ ಬಗ್ಗೆ ನಮಗೆ ಗೊತ್ತೇ ಇರಲಿಲ್ಲ."

فَكَفَىٰ بِٱللَّهِ شَهِيدَۢا بَيۡنَنَا وَبَيۡنَكُمۡ إِن كُنَّا عَنۡ عِبَادَتِكُمۡ لَغَٰفِلِينَ ٢٩

---

30. ಅಲ್ಲಿ ಪ್ರತಿಯೊಬ್ಬನೂ ತಾನು ಈಗಾಗಲೇ ಮಾಡಿಟ್ಟ ಕರ್ಮಗಳನ್ನು ತನಿಖೆ ಮಾಡುವನು. ಅವರನ್ನು ಅವರ ನೈಜ ರಕ್ಷಕನಾದ ಅಲ್ಲಾಹನ ಬಳಿಗೆ ಮರಳಿಸಲಾಗುವುದು. ಅವರು ಆರೋಪಿಸುತ್ತಿದ್ದ ಸುಳ್ಳುಗಳೆಲ್ಲವೂ ಅವರಿಂದ ಮಾಯವಾಗಿ ಬಿಡುವುವು.

هُنَالِكَ تَبۡلُواْ كُلُّ نَفۡسٖ مَّآ أَسۡلَفَتۡۚ وَرُدُّوٓاْ إِلَى ٱللَّهِ مَوۡلَىٰهُمُ ٱلۡحَقِّۖ وَضَلَّ عَنۡهُم مَّا كَانُواْ يَفۡتَرُونَ ٣٠

---

31. ಕೇಳಿರಿ: "ಆಕಾಶದಿಂದ ಮತ್ತು ಭೂಮಿಯಿಂದ ನಿಮಗೆ ಆಹಾರವನ್ನು ಒದಗಿಸುವುದು ಯಾರು? ನಿಮ್ಮ ಶ್ರವಣ ಮತ್ತು ದೃಷ್ಟಿ ಯಾರ ನಿಯಂತ್ರಣದಲ್ಲಿದೆ? ನಿರ್ಜೀವಿಯಿಂದ ಜೀವಿಯನ್ನು ಮತ್ತು ಜೀವಿಯಿಂದ ನಿರ್ಜೀವಿಯನ್ನು ಹೊರತರುವುದು ಯಾರು? ಜಗತ್ತಿನ ಎಲ್ಲಾ ವಿಷಯಗಳನ್ನು ನಿಯಂತ್ರಿಸುವುದು ಯಾರು?" ಆಗ ಅವರು ಹೇಳುವರು: "ಅಲ್ಲಾಹು." ಕೇಳಿರಿ: "ಆದರೂ ನೀವು ಅಲ್ಲಾಹನನ್ನು ಭಯಪಡುವುದಿಲ್ಲವೇ?"

قُلۡ مَن يَرۡزُقُكُم مِّنَ ٱلسَّمَآءِ وَٱلۡأَرۡضِ أَمَّن يَمۡلِكُ ٱلسَّمۡعَ وَٱلۡأَبۡصَٰرَ وَمَن يُخۡرِجُ ٱلۡحَيَّ مِنَ ٱلۡمَيِّتِ وَيُخۡرِجُ ٱلۡمَيِّتَ مِنَ ٱلۡحَيِّ وَمَن يُدَبِّرُ ٱلۡأَمۡرَۚ فَسَيَقُولُونَ ٱللَّهُۚ فَقُلۡ أَفَلَا تَتَّقُونَ ٣١

---

32. ಅವನೇ ನಿಮ್ಮ ನೈಜ ಪರಿಪಾಲಕನಾದ ಅಲ್ಲಾಹು. ಸತ್ಯದ ನಂತರ ದುರ್ಮಾರ್ಗವಲ್ಲದೆ ಇನ್ನೇನಿದೆ? ಹಾಗಿದ್ದೂ ನೀವು (ಸತ್ಯದಿಂದ)

فَذَٰلِكُمُ ٱللَّهُ رَبُّكُمُ ٱلۡحَقُّۖ فَمَاذَا بَعۡدَ ٱلۡحَقِّ إِلَّا ٱلضَّلَٰلُۖ فَأَنَّىٰ تُصۡرَفُونَ ٣٢

ತಿರುಗಿಸಲ್ಪಡುತ್ತಿರುವುದು ಹೇಗೆ?

---

33. ಈ ರೀತಿ ಆ ದುಷ್ಕರ್ಮಿಗಳಿಗೆ ಸಂಬಂಧಿಸಿದಂತೆ "ಅವರು ವಿಶ್ವಾಸ-
ವಿಡುವುದಿಲ್ಲ" ಎಂಬ ನಿಮ್ಮ ಪರಿಪಾಲಕನ (ಅಲ್ಲಾಹನ) ವಚನವು
ಸತ್ಯವಾಗಿ ಪರಿಣಮಿಸಿದೆ.

كَذَٰلِكَ حَقَّتْ كَلِمَتُ رَبِّكَ عَلَى ٱلَّذِينَ فَسَقُوٓا۟
أَنَّهُمْ لَا يُؤْمِنُونَ ﴿٣٣﴾

---

34. ಕೇಳಿರಿ: "ನೀವು (ಅಲ್ಲಾಹನೊಂದಿಗೆ) ಸಹಭಾಗಿಗಳ-
ನ್ನಾಗಿ ಮಾಡಿದವರಲ್ಲಿ (ನಿಮ್ಮ ದೇವರುಗಳಲ್ಲಿ) ಸೃಷ್ಟಿಯನ್ನು
ಆರಂಭಿಸುವವರು ಮತ್ತು ನಂತರ ಅದನ್ನು ಪುನರಾವರ್ತಿ-
ಸುವವರು ಯಾರಾದರೂ ಇದ್ದಾರೆಯೇ?" ಹೇಳಿರಿ: "ಅಲ್ಲಾಹು
ಸೃಷ್ಟಿಯನ್ನು ಆರಂಭಿಸುತ್ತಾನೆ ಮತ್ತು ನಂತರ ಅದನ್ನು ಪುನರಾ-
ವರ್ತಿಸುತ್ತಾನೆ. ಹಾಗಿದ್ದೂ ನೀವು (ಸತ್ಯದಿಂದ) ತಪ್ಪಿಸಲ್ಪಡುತ್ತಿ-
ರುವುದು ಹೇಗೆ?"

قُلْ هَلْ مِن شُرَكَآئِكُم مَّن يَبْدَؤُا۟ ٱلْخَلْقَ ثُمَّ
يُعِيدُهُۥ ۚ قُلِ ٱللَّهُ يَبْدَؤُا۟ ٱلْخَلْقَ ثُمَّ يُعِيدُهُۥ ۖ فَأَنَّىٰ
تُؤْفَكُونَ ﴿٣٤﴾

---

35. ಕೇಳಿರಿ: "ನೀವು (ಅಲ್ಲಾಹನೊಂದಿಗೆ) ಸಹಭಾಗಿಗಳನ್ನಾಗಿ
ಮಾಡಿದವರಲ್ಲಿ (ನಿಮ್ಮ ದೇವರುಗಳಲ್ಲಿ) ಸತ್ಯಮಾರ್ಗವನ್ನು
ತೋರಿಸುವವರು ಯಾರಾದರೂ ಇದ್ದಾರೆಯೇ?" ಹೇಳಿರಿ:
"ಅಲ್ಲಾಹು ಸತ್ಯಮಾರ್ಗವನ್ನು ತೋರಿಸುತ್ತಾನೆ. ಹಾಗಾದರೆ,
ಅನುಸರಿಸಲು ಹೆಚ್ಚು ಹಕ್ಕಿರುವವನು ಸತ್ಯಮಾರ್ಗವನ್ನು
ತೋರಿಸುವವನೋ ಅಥವಾ ಬೇರೆ ಯಾರಾದರೂ ಸತ್ಯಮಾ-
ರ್ಗವನ್ನು ತೋರಿಸಿದ ವಿನಾ ಸ್ವಯಂ ಸತ್ಯಮಾರ್ಗವನ್ನು ಕಾಣಲು
ಸಾಧ್ಯವಾಗದವನೋ? ನಿಮಗೇನಾಗಿದೆ? ನೀವು ಹೇಗೆ ತೀರ್ಪು
ನೀಡುತ್ತೀರಿ?"

قُلْ هَلْ مِن شُرَكَآئِكُم مَّن يَهْدِىٓ إِلَى ٱلْحَقِّ ۚ
قُلِ ٱللَّهُ يَهْدِى لِلْحَقِّ ۗ أَفَمَن يَهْدِىٓ إِلَى ٱلْحَقِّ
أَحَقُّ أَن يُتَّبَعَ أَمَّن لَّا يَهِدِّىٓ إِلَّآ أَن يُهْدَىٰ ۖ
فَمَا لَكُمْ كَيْفَ تَحْكُمُونَ ﴿٣٥﴾

---

36. ಅವರಲ್ಲಿ ಹೆಚ್ಚಿನವರು ಊಹಾಪೋಹಗಳನ್ನು ಮಾತ್ರ
ಹಿಂಬಾಲಿಸುತ್ತಾರೆ. ಸತ್ಯವನ್ನು ತಿಳಿಯುವ ವಿಷಯದಲ್ಲಿ
ಊಹಾಪೋಹಗಳು ಖಂಡಿತ ಉಪಕಾರ ಮಾಡುವುದಿಲ್ಲ.
ನಿಶ್ಚಯವಾಗಿಯೂ ಅವರು ಮಾಡುತ್ತಿರುವ ಕರ್ಮಗಳ ಬಗ್ಗೆ
ಅಲ್ಲಾಹು ಬಹಳ ಚೆನ್ನಾಗಿ ತಿಳಿದಿದ್ದಾನೆ.

وَمَا يَتَّبِعُ أَكْثَرُهُمْ إِلَّا ظَنًّا ۚ إِنَّ ٱلظَّنَّ لَا يُغْنِى
مِنَ ٱلْحَقِّ شَيْـًٔا ۚ إِنَّ ٱللَّهَ عَلِيمٌۢ بِمَا يَفْعَلُونَ ﴿٣٦﴾

---

37. ಈ ಕುರ್‌ಆನ್ ಅಲ್ಲಾಹನಿಂದಲ್ಲದೆ ಇನ್ನಾರಿಂದಲೂ ರಚಿಸಲು
ಸಾಧ್ಯವಿಲ್ಲ. ವಾಸ್ತವವಾಗಿ, ಇದು ಇದಕ್ಕಿಂತ ಮೊದಲು
ಅವತೀರ್ಣವಾದ ಗ್ರಂಥಗಳ ದೃಢೀಕರಣ ಮತ್ತು ಗ್ರಂಥದ
(ನಿಯಮಗಳ) ವಿವರಣೆಯಾಗಿದೆ. ಇದು ಸರ್ವಲೋಕಗಳ
ಪರಿಪಾಲಕನಾದ ಅಲ್ಲಾಹನಿಂದ ಅವತೀರ್ಣವಾಗಿದೆ ಎಂಬ
ವಿಷಯದಲ್ಲಿ ಸಂದೇಹವೇ ಇಲ್ಲ.

وَمَا كَانَ هَٰذَا ٱلْقُرْءَانُ أَن يُفْتَرَىٰ مِن دُونِ
ٱللَّهِ وَلَٰكِن تَصْدِيقَ ٱلَّذِى بَيْنَ يَدَيْهِ
وَتَفْصِيلَ ٱلْكِتَٰبِ لَا رَيْبَ فِيهِ مِن رَّبِّ
ٱلْعَٰلَمِينَ ﴿٣٧﴾

38. ಇದನ್ನು ಪ್ರವಾದಿಯವರು ಸ್ವಯಂ ರಚಿಸಿದರೆಂದು ಅವರು ಹೇಳುತ್ತಿದ್ದಾರೆಯೇ? ಹೇಳಿರಿ: “ಸರಿ, ಹಾಗಾದರೆ ನೀವು ಕೂಡ ಇದರಂತಿರುವ ಒಂದು ಅಧ್ಯಾಯವನ್ನು ರಚಿಸಿ ತನ್ನಿ. ಅಲ್ಲಾಹನ ಹೊರತು ನಿಮಗೆ ಸಾಧ್ಯವಿರುವ ಎಲ್ಲರನ್ನೂ ಕರೆಯಿರಿ. ನೀವು ಸತ್ಯವನ್ನೇ ಹೇಳುತ್ತಿದ್ದರೆ.”

أَمْ يَقُولُونَ ٱفْتَرَىٰهُ ۖ قُلْ فَأْتُوا۟ بِسُورَةٍ مِّثْلِهِۦ
وَٱدْعُوا۟ مَنِ ٱسْتَطَعْتُم مِّن دُونِ ٱللَّهِ إِن كُنتُمْ
صَٰدِقِينَ ﴿٣٨﴾

39. ಬದಲಿಗೆ, ಯಾವುದನ್ನು ಅವರು ಸೂಕ್ಷ್ಮವಾಗಿ ಅರ್ಥಮಾಡಿ-ಕೊಳ್ಳಲಿಲ್ಲವೋ ಮತ್ತು ಯಾವುದರ ಫಲಿತಾಂಶವು ಅವರನ್ನು ತಲುಪಲಿಲ್ಲವೋ ಅದನ್ನು ಅವರು ನಿಷೇಧಿಸಿದರು. ಅವರಿಗಿಂತ ಮೊದಲಿನವರೂ ಹೀಗೆಯೇ ನಿಷೇಧಿಸಿದ್ದರು. ಆದ್ದರಿಂದ, ಅಕ್ರಮಿಗಳ ಅಂತ್ಯವು ಹೇಗಿತ್ತೆಂದು ನೋಡಿರಿ.

بَلْ كَذَّبُوا۟ بِمَا لَمْ يُحِيطُوا۟ بِعِلْمِهِۦ وَلَمَّا يَأْتِهِمْ
تَأْوِيلُهُۥ ۚ كَذَٰلِكَ كَذَّبَ ٱلَّذِينَ مِن قَبْلِهِمْ ۖ
فَٱنظُرْ كَيْفَ كَانَ عَٰقِبَةُ ٱلظَّٰلِمِينَ ﴿٣٩﴾

40. ಅವರಲ್ಲಿ ಕೆಲವರು ಅದರಲ್ಲಿ (ಕುರ್‌ಆನಿನಲ್ಲಿ) ವಿಶ್ವಾಸವಿಡುತ್ತಾರೆ ಮತ್ತು ಕೆಲವರು ವಿಶ್ವಾಸವಿಡುವುದಿಲ್ಲ. ಅಲ್ಲಾಹು ಕಿಡಿಗೇಡಿಗಳ ಬಗ್ಗೆ ಬಹಳ ಚೆನ್ನಾಗಿ ತಿಳಿದಿದ್ದಾನೆ.

وَمِنْهُم مَّن يُؤْمِنُ بِهِۦ وَمِنْهُم مَّن لَّا يُؤْمِنُ بِهِۦ ۚ
وَرَبُّكَ أَعْلَمُ بِٱلْمُفْسِدِينَ ﴿٤٠﴾

41. ಅವರು ನಿಮ್ಮನ್ನು ನಿಷೇಧಿಸಿದರೆ ಹೇಳಿರಿ: “ನನಗೆ ನನ್ನ ಕರ್ಮ ಮತ್ತು ನಿಮಗೆ ನಿಮ್ಮ ಕರ್ಮ. ನಾನು ಮಾಡುವ ಕರ್ಮಗಳಿಂದ ನೀವು ಹೊಣೆಮುಕ್ತರಾಗಿದ್ದೀರಿ ಮತ್ತು ನೀವು ಮಾಡುವ ಕರ್ಮಗಳಿಂದ ನಾನು ಹೊಣೆಮುಕ್ತನಾಗಿದ್ದೇನೆ.”

وَإِن كَذَّبُوكَ فَقُل لِّى عَمَلِى وَلَكُمْ عَمَلُكُمْ ۖ
أَنتُم بَرِيٓـُٔونَ مِمَّآ أَعْمَلُ وَأَنَا۠ بَرِىٓءٌ مِّمَّا
تَعْمَلُونَ ﴿٤١﴾

42. ಅವರಲ್ಲಿ ಕೆಲವರು ನೀವು ಹೇಳುವುದನ್ನು ಕಿವಿಗೊಟ್ಟು ಕೇಳುತ್ತಾರೆ. ಆದರೆ ಆ ಕಿವುಡರಿಗೆ (ನಿಮ್ಮ ಸಂದೇಶವು) ಕೇಳುವಂತೆ ಮಾಡಲು ನಿಮಗೆ ಸಾಧ್ಯವೇ? ಅವರು ಅದನ್ನು ಅರ್ಥಮಾಡಿಕೊಳ್ಳುವ ಪ್ರಯತ್ನ ಮಾಡದಿದ್ದರೂ ಸಹ?

وَمِنْهُم مَّن يَسْتَمِعُونَ إِلَيْكَ ۚ أَفَأَنتَ تُسْمِعُ
ٱلصُّمَّ وَلَوْ كَانُوا۟ لَا يَعْقِلُونَ ﴿٤٢﴾

43. ಅವರಲ್ಲಿ ಕೆಲವರು ನಿಮ್ಮನ್ನು ನೋಡುತ್ತಾರೆ. ಆದರೆ ಆ ಕುರುಡರಿಗೆ ದಾರಿ ತೋರಿಸಲು ನಿಮಗೆ ಸಾಧ್ಯವೇ? ಅವರು ನೋಡುವ ಪ್ರಯತ್ನ ಮಾಡದಿದ್ದರೂ ಸಹ?[1]

وَمِنْهُم مَّن يَنظُرُ إِلَيْكَ ۚ أَفَأَنتَ تَهْدِى ٱلْعُمْىَ
وَلَوْ كَانُوا۟ لَا يُبْصِرُونَ ﴿٤٣﴾

44. ನಿಶ್ಚಯವಾಗಿಯೂ ಅಲ್ಲಾಹು ಮನುಷ್ಯರಿಗೆ ಸ್ವಲ್ಪವೂ ಅನ್ಯಾಯ ಮಾಡುವುದಿಲ್ಲ. ಆದರೆ ಮನುಷ್ಯರು ಸ್ವಯಂ ಅವರಿಗೇ ಅನ್ಯಾಯ ಮಾಡುತ್ತಿದ್ದಾರೆ.

إِنَّ ٱللَّهَ لَا يَظْلِمُ ٱلنَّاسَ شَيْـًٔا وَلَٰكِنَّ ٱلنَّاسَ
أَنفُسَهُمْ يَظْلِمُونَ ﴿٤٤﴾

45. ಅವನು ಅವರನ್ನು ಒಟ್ಟುಗೂಡಿಸುವ ದಿನ ಹಗಲಿನ ಕೆಲವು

وَيَوْمَ يَحْشُرُهُمْ كَأَن لَّمْ يَلْبَثُوٓا۟ إِلَّا سَاعَةً مِّنَ

[1] ಅವರು ಕುರ್‌ಆನ್ ಪಠಣಕ್ಕೆ ಕಿವಿಗೊಡುತ್ತಾರೆ. ಅದೇ ರೀತಿ ನೀವು ಪಠಿಸುವಾಗ ಅವರು ನಿಮ್ಮನ್ನು ಗಮನದಿಂದ ನೋಡುತ್ತಾರೆ. ಆದರೆ ಅವರ ಉದ್ದೇಶವು ಬೇರೆಯೇ ಆಗಿರುತ್ತದೆ. ಕುರ್‌ಆನ್ ಕಲಿಯುವುದು ಅಥವಾ ಅರ್ಥಮಾಡಿಕೊಳ್ಳುವುದು ಅವರ ಉದ್ದೇಶವಲ್ಲ. ಇಂತಹ ಜನರು ಕಿವುಡರು ಮತ್ತು ಕುರುಡರಂತೆ.

ತಾಸುಗಳು ಮಾತ್ರ (ಭೂಲೋಕದಲ್ಲಿ) ವಾಸವಾಗಿದ್ದೆವೋ ಎಂಬಂತೆ ಅವರಿಗೆ ಭಾಸವಾಗುವುದು. ಅವರು ಪರಸ್ಪರ ಗುರುತಿಸುವರು. ಅಲ್ಲಾಹನ ಭೇಟಿಯನ್ನು ನಿಷೇಧಿಸಿದವರು ನಷ್ಟಹೊಂದಿದರು. ಅವರು ಸನ್ಮಾರ್ಗ ಪಡೆದವರಾಗಲಿಲ್ಲ.

ٱلنَّهَارِ يَتَعَارَفُونَ بَيْنَهُمْ ۚ قَدْ خَسِرَ ٱلَّذِينَ
كَذَّبُوا۟ بِلِقَآءِ ٱللَّهِ وَمَا كَانُوا۟ مُهْتَدِينَ ﴿٤٥﴾

---

46. ನಾವು ಅವರಿಗೆ ವಾಗ್ದಾನ ಮಾಡುವ ಶಿಕ್ಷೆಗಳಲ್ಲಿ ಕೆಲವನ್ನು ನಾವು ನಿಮಗೆ ತೋರಿಸಿಕೊಟ್ಟರೂ ಅಥವಾ (ಅದಕ್ಕಿಂತ ಮೊದಲೇ) ನಾವು ನಿಮ್ಮನ್ನು ಮೃತಪಡಿಸಿದರೂ ಅವರು ಮರಳುವುದು ನಮ್ಮ ಬಳಿಗೇ ಆಗಿದೆ. ನಂತರ, ಅವರು ಮಾಡುವ ಎಲ್ಲಾ ಕರ್ಮಗಳಿಗೂ ಅಲ್ಲಾಹು ಸಾಕ್ಷಿಯಾಗಿದ್ದಾನೆ.

وَإِمَّا نُرِيَنَّكَ بَعْضَ ٱلَّذِى نَعِدُهُمْ أَوْ نَتَوَفَّيَنَّكَ
فَإِلَيْنَا مَرْجِعُهُمْ ثُمَّ ٱللَّهُ شَهِيدٌ عَلَىٰ مَا
يَفْعَلُونَ ﴿٤٦﴾

---

47. ಎಲ್ಲಾ ಸಮುದಾಯಗಳಿಗೂ ಒಬ್ಬ ಸಂದೇಶವಾಹಕರಿದ್ದಾರೆ. ಅವರ ಸಂದೇಶವಾಹಕರ ಆಗಮನವಾದರೆ, ಅವರ ಮಧ್ಯೆ ನ್ಯಾಯಯುತವಾಗಿ ತೀರ್ಪು ನೀಡಲಾಗುವುದು. ಅವರಿಗೆ ಸ್ವಲ್ಪವೂ ಅನ್ಯಾಯವಾಗುವುದಿಲ್ಲ.[1]

وَلِكُلِّ أُمَّةٍ رَّسُولٌ ۖ فَإِذَا جَآءَ رَسُولُهُمْ قُضِىَ
بَيْنَهُم بِٱلْقِسْطِ وَهُمْ لَا يُظْلَمُونَ ﴿٤٧﴾

---

48. ಅವರು ಕೇಳುತ್ತಾರೆ: “ಈ ವಾಗ್ದಾನವು ಸತ್ಯವಾಗುವುದು ಯಾವಾಗ? ನೀವು ಸತ್ಯವಂತರಾಗಿದ್ದರೆ ಹೇಳಿರಿ.”

وَيَقُولُونَ مَتَىٰ هَٰذَا ٱلْوَعْدُ إِن كُنتُمْ
صَٰدِقِينَ ﴿٤٨﴾

---

49. ಹೇಳಿರಿ: “ನಾನು ಸ್ವಯಂ ನನಗೆ ಯಾವುದೇ ಪ್ರಯೋಜನ ಅಥವಾ ತೊಂದರೆ ಮಾಡುವ ಸಾಮರ್ಥ್ಯವನ್ನು ಹೊಂದಿಲ್ಲ. ಅಲ್ಲಾಹು ಏನು ಇಚ್ಛಿಸುತ್ತಾನೋ ಅದರ ಹೊರತು. ಎಲ್ಲಾ ಸಮುದಾಯಗಳಿಗೂ ಒಂದು ಅವಧಿಯಿದೆ. ಅವರ ಅವಧಿಯು ಬಂದರೆ, ಒಂದು ಕ್ಷಣ ಹಿಂದೂಡಲು ಅಥವಾ ಮುಂದೂಡಲು ಅವರಿಂದ ಸಾಧ್ಯವಿಲ್ಲ.”

قُل لَّآ أَمْلِكُ لِنَفْسِى ضَرًّا وَلَا نَفْعًا إِلَّا مَا
شَآءَ ٱللَّهُ ۗ لِكُلِّ أُمَّةٍ أَجَلٌ ۚ إِذَا جَآءَ أَجَلُهُمْ فَلَا
يَسْتَـْٔخِرُونَ سَاعَةً ۖ وَلَا يَسْتَقْدِمُونَ ﴿٤٩﴾

---

50. ಹೇಳಿರಿ: “ನೀವು ಆಲೋಚಿಸಿ ನೋಡಿದ್ದೀರಾ! ಅಲ್ಲಾಹನ ಶಿಕ್ಷೆಯು ನಿಮ್ಮ ಬಳಿಗೆ ರಾತ್ರಿಯಲ್ಲಿ ಅಥವಾ ಹಗಲಿನಲ್ಲಿ ಬಂದರೆ, ಅದರಲ್ಲಿ ಯಾವುದಕ್ಕಾಗಿ ಅಪರಾಧಿಗಳು ತ್ವರೆ ಮಾಡುತ್ತಿದ್ದಾರೆ?”

قُلْ أَرَءَيْتُمْ إِنْ أَتَىٰكُمْ عَذَابُهُۥ بَيَٰتًا أَوْ نَهَارًا
مَّاذَا يَسْتَعْجِلُ مِنْهُ ٱلْمُجْرِمُونَ ﴿٥٠﴾

---

51. ನಂತರ ಅದು ಬಂದ ಬಳಿಕ ನೀವು ಅದನ್ನು ನಂಬುವಿರಾ? (ಆಗ ನಿಮ್ಮೊಡನೆ ಹೇಳಲಾಗುವುದು): “ಈಗ ನೀವು ನಂಬುತ್ತೀರಾ?

أَثُمَّ إِذَا مَا وَقَعَ ءَامَنتُم بِهِۦٓ ۚ ءَآلْـَٰٔنَ وَقَدْ كُنتُم
بِهِۦ تَسْتَعْجِلُونَ ﴿٥١﴾

---

[1] ಇದಕ್ಕೆ ಎರಡು ರೀತಿಯ ವ್ಯಾಖ್ಯಾನಗಳಿವೆ. 1. ಅಲ್ಲಾಹು ಎಲ್ಲಾ ಸಮುದಾಯಗಳಿಗೆ ಪ್ರವಾದಿಗಳನ್ನು ಕಳುಹಿಸುತ್ತಾನೆ. ಒಂದು ಸಮುದಾಯಕ್ಕೆ ಪ್ರವಾದಿಯ ಆಗಮನವಾಗಿ ಅವರು ತಮ್ಮ ಕರ್ತವ್ಯವನ್ನು ಪೂರೈಸಿದ ನಂತರ ಅಲ್ಲಾಹು ಆ ಸಮುದಾಯದ ವಿಷಯದಲ್ಲಿ ನ್ಯಾಯಯುತವಾಗಿ ತೀರ್ಮಾನ ಕೈಗೊಳ್ಳುತ್ತಾನೆ. ಅಂದರೆ ಪ್ರವಾದಿಯನ್ನು ಮತ್ತು ಸತ್ಯವಿಶ್ವಾಸಿಗಳನ್ನು ರಕ್ಷಿಸುತ್ತಾನೆ ಹಾಗೂ ಸತ್ಯನಿಷೇಧಿಗಳನ್ನು ಶಿಕ್ಷಿಸುತ್ತಾನೆ. ಅವರಿಗೆ ಯಾವುದೇ ಅನ್ಯಾಯವಾಗುವುದಿಲ್ಲ. 2. ಪುನರುತ್ಥಾನ ದಿನದಂದು ಎಲ್ಲಾ ಸಮುದಾಯಗಳು ತಮ್ಮ ತಮ್ಮ ಪ್ರವಾದಿಗಳೊಡನೆ ಬರುತ್ತಾರೆ. ಅಲ್ಲಿ ಕರ್ಮಪುಸ್ತಕಗಳನ್ನು ಇಡಲಾಗುತ್ತದೆ ಮತ್ತು ಸಾಕ್ಷಿ ಹೇಳಲು ದೇವದೂತರುಗಳು ಬರುತ್ತಾರೆ. ಅಲ್ಲಾಹು ಆ ಸಮುದಾಯದ ವಿಷಯದಲ್ಲಿ ನ್ಯಾಯಯುತವಾಗಿ ತೀರ್ಪು ನೀಡುತ್ತಾನೆ. ಅವರಿಗೆ ಯಾವುದೇ ಅನ್ಯಾಯವಾಗುವುದಿಲ್ಲ.

ನೀವು ಇದಕ್ಕಾಗಿ ತ್ವರೆ ಮಾಡುತ್ತಿದ್ದಿರಲ್ಲವೇ?"

52. ನಂತರ ಅಕ್ರಮಿಗಳೊಡನೆ ಹೇಳಲಾಗುವುದು: "ಶಾಶ್ವತ ಶಿಕ್ಷೆಯ ರುಚಿಯನ್ನು ನೋಡಿರಿ. ನೀವು ಮಾಡಿದ ಕರ್ಮಗಳಿಗಲ್ಲದೆ ಬೇರೇನಾದರೂ ನಿಮಗೆ ಪ್ರತಿಫಲ ನೀಡಲಾಗುವುದೇ?"

ثُمَّ قِيلَ لِلَّذِينَ ظَلَمُواْ ذُوقُواْ عَذَابَ ٱلۡخُلۡدِ هَلۡ
تُجۡزَوۡنَ إِلَّا بِمَا كُنتُمۡ تَكۡسِبُونَ ٥٢

53. "ಅದು ನಿಜವೇ?" ಎಂದು ಅವರು ನಿಮ್ಮೊಡನೆ ವಿಚಾರಿಸುತ್ತಾರೆ. ಹೇಳಿರಿ: "ಹೌದು! ನನ್ನ ಪರಿಪಾಲಕನ (ಅಲ್ಲಾಹನ) ಆಣೆ! ನಿಶ್ಚಯವಾಗಿಯೂ ಅದು ಸತ್ಯವಾಗಿದೆ. ನಿಮಗೆ ಅಲ್ಲಾಹನನ್ನು ಸೋಲಿಸಲು ಸಾಧ್ಯವಿಲ್ಲ."

وَيَسۡتَنۢبِـُٔونَكَ أَحَقٌّ هُوَۖ قُلۡ إِي وَرَبِّيٓ إِنَّهُۥ
لَحَقّٞۖ وَمَآ أَنتُم بِمُعۡجِزِينَ ٥٣

54. ಅಕ್ರಮವೆಸಗಿದ ಪ್ರತಿಯೊಬ್ಬ ವ್ಯಕ್ತಿಯ ಬಳಿ ಭೂಮಿಯಲ್ಲಿರುವುದೆಲ್ಲವೂ ಇದ್ದರೂ ಅವನು ಅವೆಲ್ಲವನ್ನೂ ಪರಿಹಾರವಾಗಿ ನೀಡಿಯಾದರೂ ಶಿಕ್ಷೆಯಿಂದ ಪಾರಾಗಲು ಬಯಸುತ್ತಿದ್ದನು. ಶಿಕ್ಷೆಯನ್ನು ಕಾಣುವಾಗ ಅವರು ತಮ್ಮ ವಿಷಾದವನ್ನು ಅಡಗಿಸುವರು. ಅವರ ನಡುವೆ ನ್ಯಾಯಯುತವಾಗಿ ತೀರ್ಪು ನೀಡಲಾಗುವುದು. ಅವರಿಗೆ ಸ್ವಲ್ಪವೂ ಅನ್ಯಾಯವಾಗುವುದಿಲ್ಲ.

وَلَوۡ أَنَّ لِكُلِّ نَفۡسٖ ظَلَمَتۡ مَا فِي ٱلۡأَرۡضِ
لَٱفۡتَدَتۡ بِهِۦۗ وَأَسَرُّواْ ٱلنَّدَامَةَ لَمَّا رَأَوُاْ ٱلۡعَذَابَۖ
وَقُضِيَ بَيۡنَهُم بِٱلۡقِسۡطِ وَهُمۡ لَا يُظۡلَمُونَ ٥٤

55. ತಿಳಿಯಿರಿ! ನಿಶ್ಚಯವಾಗಿಯೂ ಭೂಮ್ಯಾಕಾಶಗಳಲ್ಲಿರುವುದೆಲ್ಲವೂ ಅಲ್ಲಾಹನಿಗೆ ಸೇರಿದ್ದು. ತಿಳಿಯಿರಿ! ನಿಶ್ಚಯವಾಗಿಯೂ ಅಲ್ಲಾಹನ ವಾಗ್ದಾನವು ಸತ್ಯವಾಗಿದೆ. ಆದರೆ ಅವರಲ್ಲಿ ಹೆಚ್ಚಿನವರು ತಿಳಿಯುವುದಿಲ್ಲ.

أَلَآ إِنَّ لِلَّهِ مَا فِي ٱلسَّمَٰوَٰتِ وَٱلۡأَرۡضِۗ أَلَآ
إِنَّ وَعۡدَ ٱللَّهِ حَقّٞ وَلَٰكِنَّ أَكۡثَرَهُمۡ
لَا يَعۡلَمُونَ ٥٥

56. ಅವನು ಜೀವ ಮತ್ತು ಮರಣವನ್ನು ನೀಡುತ್ತಾನೆ. ನಿಮ್ಮನ್ನು ಅವನ ಬಳಿಗೇ ಮರಳಿಸಲಾಗುವುದು.

هُوَ يُحۡيِۦ وَيُمِيتُ وَإِلَيۡهِ تُرۡجَعُونَ ٥٦

57. ಓ ಮನುಷ್ಯರೇ! ನಿಮಗೆ ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಒಂದು ಉಪದೇಶವು ಬಂದಿದೆ. ಅದು ಹೃದಯಗಳಲ್ಲಿರುವ ರೋಗಕ್ಕೆ ಉಪಶಮನವಾಗಿದೆ ಮತ್ತು ಸತ್ಯವಿಶ್ವಾಸಿಗಳಿಗೆ ಸನ್ಮಾರ್ಗ ಹಾಗೂ ದಯೆಯಾಗಿದೆ.

يَٰٓأَيُّهَا ٱلنَّاسُ قَدۡ جَآءَتۡكُم مَّوۡعِظَةٞ مِّن
رَّبِّكُمۡ وَشِفَآءٞ لِّمَا فِي ٱلصُّدُورِ وَهُدٗى وَرَحۡمَةٞ
لِّلۡمُؤۡمِنِينَ ٥٧

58. ಹೇಳಿರಿ: "ಅಲ್ಲಾಹನ ಈ ಔದಾರ್ಯ ಮತ್ತು ದಯೆಯಿಂದ ಅವರು (ಸತ್ಯವಿಶ್ವಾಸಿಗಳು) ಸಂತೋಷಪಡಲಿ. ಅವರು ಶೇಖರಿಸುವ ಎಲ್ಲಾ ವಸ್ತುಗಳಿಗಿಂತಲೂ ಇದು ಶ್ರೇಷ್ಠವಾಗಿದೆ."

قُلۡ بِفَضۡلِ ٱللَّهِ وَبِرَحۡمَتِهِۦ فَبِذَٰلِكَ فَلۡيَفۡرَحُواْ
هُوَ خَيۡرٞ مِّمَّا يَجۡمَعُونَ ٥٨

59. ಹೇಳಿರಿ: "ನೀವು ಆಲೋಚಿಸಿ ನೋಡಿದ್ದೀರಾ! ಅಲ್ಲಾಹು ನಿಮಗೆ ಏನೆಲ್ಲಾ ಆಹಾರಗಳನ್ನು ಒದಗಿಸಿದ್ದಾನೋ ಅವುಗಳಲ್ಲಿ ಕೆಲವನ್ನು ನೀವು ನಿಷೇಧಿಸಿದ್ದೀರಿ ಮತ್ತು ಕೆಲವನ್ನು ಅನುಮತಿಸಿದ್ದೀರಿ." ಕೇಳಿರಿ: "ಹೀಗೆ ಮಾಡಲು ಅಲ್ಲಾಹು ನಿಮಗೆ ಆಜ್ಞಾಪಿಸಿದನೇ?

قُلۡ أَرَءَيۡتُم مَّآ أَنزَلَ ٱللَّهُ لَكُم مِّن رِّزۡقٖ
فَجَعَلۡتُم مِّنۡهُ حَرَامٗا وَحَلَٰلٗا قُلۡ ءَآللَّهُ أَذِنَ
لَكُمۡۖ أَمۡ عَلَى ٱللَّهِ تَفۡتَرُونَ ٥٩

ಅಥವಾ ನೀವು ಅಲ್ಲಾಹನ ಮೇಲೆ ಸುಳ್ಳು ಆರೋಪಿಸುತ್ತಿದ್ದೀರಾ?”

---

60. ಪುನರುತ್ಥಾನದ ದಿನದಂದು ಅಲ್ಲಾಹನ ಮೇಲೆ ಸುಳ್ಳು ಆರೋಪಿಸುವವರ ಭಾವನೆ ಏನಿರಬಹುದು? ನಿಶ್ಚಯವಾಗಿಯೂ ಅಲ್ಲಾಹನಿಗೆ ಜನರ ಮೇಲೆ ಮಹಾ ಔದಾರ್ಯವಿದೆ. ಆದರೆ ಅವರಲ್ಲಿ ಹೆಚ್ಚಿನವರೂ ಕೃತಜ್ಞರಾಗುವುದಿಲ್ಲ.

وَمَا ظَنُّ ٱلَّذِينَ يَفۡتَرُونَ عَلَى ٱللَّهِ ٱلۡكَذِبَ يَوۡمَ ٱلۡقِيَٰمَةِۗ إِنَّ ٱللَّهَ لَذُو فَضۡلٍ عَلَى ٱلنَّاسِ وَلَٰكِنَّ أَكۡثَرَهُمۡ لَا يَشۡكُرُونَ ٦٠

---

61. ನೀವು ಯಾವುದೇ ಕೆಲಸದಲ್ಲಿ ನಿರತರಾಗಿದ್ದರೂ, ನೀವು ಕುರ್‌ಆನಿನ ಯಾವುದೇ ಭಾಗವನ್ನು ಪಠಿಸುತ್ತಿದ್ದರೂ, ಮತ್ತು ನೀವು (ಜನರು) ಯಾವುದೇ ಕೆಲಸವನ್ನು ಮಾಡುತ್ತಿದ್ದರೂ, ನೀವು ಅದರಲ್ಲಿ ಮುಳುಗಿರುವಾಗ ನಾವು ನಿಮ್ಮ ಮೇಲೆ ಸಂಪೂರ್ಣ ಸಾಕ್ಷಿಯಾಗಿರುತ್ತೇವೆ. ಭೂಮಿಯಲ್ಲಿ ಅಥವಾ ಆಕಾಶದಲ್ಲಿರುವ ಒಂದು ಅಣುವಿನ ತೂಕದಷ್ಟಿರುವ—ಅಥವಾ ಅದಕ್ಕಿಂತ ಚಿಕ್ಕ ಅಥವಾ ಅದಕ್ಕಿಂತ ದೊಡ್ಡ—ಯಾವುದೇ ಒಂದು ವಸ್ತುವೂ ನಿಮ್ಮ ಪರಿಪಾಲಕನ (ಅಲ್ಲಾಹನ) ದೃಷ್ಟಿಯಿಂದ ಮರೆಯಾಗಿಲ್ಲ. ಎಲ್ಲವನ್ನೂ ಒಂದು ಸ್ಪಷ್ಟ ದಾಖಲೆಯಲ್ಲಿ ನಮೂದಿಸಿಡಲಾಗಿದೆ.

وَمَا تَكُونُ فِي شَأۡنٖ وَمَا تَتۡلُواْ مِنۡهُ مِن قُرۡءَانٖ وَلَا تَعۡمَلُونَ مِنۡ عَمَلٍ إِلَّا كُنَّا عَلَيۡكُمۡ شُهُودًا إِذۡ تُفِيضُونَ فِيهِۚ وَمَا يَعۡزُبُ عَن رَّبِّكَ مِن مِّثۡقَالِ ذَرَّةٖ فِي ٱلۡأَرۡضِ وَلَا فِي ٱلسَّمَآءِ وَلَآ أَصۡغَرَ مِن ذَٰلِكَ وَلَآ أَكۡبَرَ إِلَّا فِي كِتَٰبٖ مُّبِينٍ ٦١

---

62. ತಿಳಿಯಿರಿ! ನಿಶ್ಚಯವಾಗಿಯೂ ಅಲ್ಲಾಹನ ಇಷ್ಟದಾಸರಿಗೆ ಯಾವುದೇ ಭಯವಿಲ್ಲ. ಅವರು ದುಃಖಿಸುವುದೂ ಇಲ್ಲ.

أَلَآ إِنَّ أَوۡلِيَآءَ ٱللَّهِ لَا خَوۡفٌ عَلَيۡهِمۡ وَلَا هُمۡ يَحۡزَنُونَ ٦٢

---

63. ಅವರು ವಿಶ್ವಾಸವಿಟ್ಟವರು ಮತ್ತು ದೇವಭಯವುಳ್ಳವರಾಗಿದ್ದಾರೆ.

ٱلَّذِينَ ءَامَنُواْ وَكَانُواْ يَتَّقُونَ ٦٣

---

64. ಅವರಿಗೆ ಇಹಲೋಕದಲ್ಲಿ ಮತ್ತು ಪರಲೋಕದಲ್ಲಿ ಸುವಾರ್ತೆಗಳಿವೆ. ಅಲ್ಲಾಹನ ವಚನಗಳಿಗೆ ಯಾವುದೇ ಬದಲಾವಣೆಯಿಲ್ಲ. ಅದೇ ಅತಿದೊಡ್ಡ ಯಶಸ್ಸು.

لَهُمُ ٱلۡبُشۡرَىٰ فِي ٱلۡحَيَوٰةِ ٱلدُّنۡيَا وَفِي ٱلۡأٓخِرَةِۚ لَا تَبۡدِيلَ لِكَلِمَٰتِ ٱللَّهِۚ ذَٰلِكَ هُوَ ٱلۡفَوۡزُ ٱلۡعَظِيمُ ٦٤

---

65. ಅವರ ಮಾತುಗಳು ನಿಮ್ಮನ್ನು ಬೇಸರಗೊಳಿಸದಿರಲಿ. ನಿಶ್ಚಯವಾಗಿಯೂ ಪ್ರಾಬಲ್ಯವು ಸಂಪೂರ್ಣವಾಗಿ ಅಲ್ಲಾಹನಿಗೆ ಮಾತ್ರವಿದೆ. ಅವನು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

وَلَا يَحۡزُنكَ قَوۡلُهُمۡۘ إِنَّ ٱلۡعِزَّةَ لِلَّهِ جَمِيعًاۚ هُوَ ٱلسَّمِيعُ ٱلۡعَلِيمُ ٦٥

---

66. ತಿಳಿಯಿರಿ! ನಿಶ್ಚಯವಾಗಿಯೂ ಭೂಮ್ಯಾಕಾಶಗಳಲ್ಲಿರುವ ಎಲ್ಲರೂ ಅಲ್ಲಾಹನಿಗೆ ಸೇರಿದವರು. ಅಲ್ಲಾಹನ ಬಿಟ್ಟು ಅವನೊಂದಿಗೆ ಸಹಭಾಗಿಗಳನ್ನಾಗಿ ಮಾಡಿದ ದೇವರುಗಳನ್ನು ಕರೆದು ಪ್ರಾರ್ಥಿಸುವವರು ಏನನ್ನು ಹಿಂಬಾಲಿಸುತ್ತಾರೆ? ಅವರು ಕೇವಲ ಊಹಾ-ಪೋಹಗಳನ್ನು ಮಾತ್ರ ಹಿಂಬಾಲಿಸುತ್ತಾರೆ.

أَلَآ إِنَّ لِلَّهِ مَن فِي ٱلسَّمَٰوَٰتِ وَمَن فِي ٱلۡأَرۡضِۗ وَمَا يَتَّبِعُ ٱلَّذِينَ يَدۡعُونَ مِن دُونِ ٱللَّهِ شُرَكَآءَۚ إِن يَتَّبِعُونَ إِلَّا ٱلظَّنَّ وَإِنۡ هُمۡ إِلَّا يَخۡرُصُونَ ٦٦

ಅವರು ಸುಳ್ಳನ್ನು ಮಾತ್ರ ಆರೋಪಿಸುತ್ತಾರೆ.

67. ನಿಮಗೆ ವಿಶ್ರಾಂತಿ ಪಡೆಯಲು ರಾತ್ರಿಯನ್ನು ಮಾಡಿದವನು ಮತ್ತು (ನಿಮ್ಮ ಉಪಜೀವನಕ್ಕಾಗಿ) ಹಗಲನ್ನು ಪ್ರಕಾಶಮಯವಾಗಿ ಮಾಡಿದವನು ಅವನೇ. ನಿಶ್ಚಯವಾಗಿಯೂ ಕಿವಿಗೊಡುವ ಜನರಿಗೆ ಅದರಲ್ಲಿ ಅನೇಕ ದೃಷ್ಟಾಂತಗಳಿವೆ.

هُوَ ٱلَّذِى جَعَلَ لَكُمُ ٱلَّيۡلَ لِتَسۡكُنُواْ فِيهِ وَٱلنَّهَارَ مُبۡصِرًاۚ إِنَّ فِى ذَٰلِكَ لَأٓيَٰتٖ لِّقَوۡمٖ يَسۡمَعُونَ ٦٧

68. ಅವರು ಹೇಳಿದರು: “ಅಲ್ಲಾಹನಿಗೆ ಮಕ್ಕಳಿದ್ದಾರೆ.” ಅವನು ಪರಮ ಪರಿಶುದ್ಧನು. ಅವನಿಗೆ ಯಾರ ಅಗತ್ಯವೂ ಇಲ್ಲ. ಭೂಮ್ಯಾಕಾಶಗಳಲ್ಲಿರುವುದೆಲ್ಲವೂ ಅವನಿಗೆ ಸೇರಿದ್ದು. ಹೀಗೆ ಹೇಳಲು ನಿಮ್ಮ ಬಳಿ ಏನಾದರೂ ಸಾಕ್ಷ್ಯಾಧಾರವಿದೆಯೇ? ನಿಮಗೆ ಗೊತ್ತಿಲ್ಲದ ವಿಷಯಗಳನ್ನು ನೀವು ಅಲ್ಲಾಹನ ಮೇಲೆ ಆರೋಪಿಸುತ್ತೀರಾ?

قَالُواْ ٱتَّخَذَ ٱللَّهُ وَلَدٗاۗ سُبۡحَٰنَهُۥۖ هُوَ ٱلۡغَنِيُّۖ لَهُۥ مَا فِى ٱلسَّمَٰوَٰتِ وَمَا فِى ٱلۡأَرۡضِۚ إِنۡ عِندَكُم مِّن سُلۡطَٰنِۭ بِهَٰذَآۚ أَتَقُولُونَ عَلَى ٱللَّهِ مَا لَا تَعۡلَمُونَ ٦٨

69. ಹೇಳಿರಿ: “ನಿಶ್ಚಯವಾಗಿಯೂ ಅಲ್ಲಾಹನ ಮೇಲೆ ಸುಳ್ಳು ಆರೋಪಿಸುವವರು ಯಶಸ್ವಿಯಾಗುವುದಿಲ್ಲ.”

قُلۡ إِنَّ ٱلَّذِينَ يَفۡتَرُونَ عَلَى ٱللَّهِ ٱلۡكَذِبَ لَا يُفۡلِحُونَ ٦٩

70. ಅವರಿಗಿರುವುದು ಇಹಲೋಕದ ಆನಂದ ಮಾತ್ರ. ನಂತರ ಅವರನ್ನು ನಮ್ಮ ಬಳಿಗೆ ಮರಳಿಸಲಾಗುತ್ತದೆ. ನಂತರ, ಅವರು ಸತ್ಯವನ್ನು ನಿಷೇಧಿಸಿದ್ದಕ್ಕಾಗಿ ನಾವು ಅವರಿಗೆ ಕಠೋರ ಶಿಕ್ಷೆಯ ರುಚಿಯನ್ನು ತೋರಿಸುವೆವು.

مَتَٰعٞ فِى ٱلدُّنۡيَا ثُمَّ إِلَيۡنَا مَرۡجِعُهُمۡ ثُمَّ نُذِيقُهُمُ ٱلۡعَذَابَ ٱلشَّدِيدَ بِمَا كَانُواْ يَكۡفُرُونَ ٧٠

71. ಅವರಿಗೆ ನೂಹರ ಸಮಾಚಾರವನ್ನು ಓದಿಕೊಡಿ. ಅವರು ತಮ್ಮ ಜನರೊಡನೆ ಹೇಳಿದ ಸಂದರ್ಭ: “ಓ ನನ್ನ ಜನರೇ! ನಾನು ನಿಮ್ಮ ನಡುವೆಯಿರುವುದು ಮತ್ತು ನಾನು ಅಲ್ಲಾಹನ ವಚನಗಳನ್ನು ಪಠಿಸಿ ಉಪದೇಶ ನೀಡುವುದು ನಿಮಗೆ ದೊಡ್ಡ ಹೊರೆಯಂತೆ ಕಾಣುತ್ತಿದ್ದರೆ, ನಾನಂತೂ ಅಲ್ಲಾಹನಲ್ಲಿ ಭರವಸೆಯಿದ್ದೇನೆ; ನೀವು ನಿಮ್ಮೆಲ್ಲಾ ಷಡ್ಯಂತ್ರಗಳನ್ನು ಒಟ್ಟುಗೂಡಿಸಿ ನಿಮ್ಮ ಸಹಭಾಗಿಗಳನ್ನು (ದೇವರುಗಳನ್ನು) ಕರೆಯಿರಿ. ನಂತರ ನಿಮ್ಮ ಷಡ್ಯಂತ್ರವು (ಫಲಿಸುತ್ತದೋ ಇಲ್ಲವೋ ಎಂಬ) ವಿಷಯದಲ್ಲಿ ನಿಮಗೆ ಯಾವುದೇ ಅಸ್ಪಷ್ಟತೆ ಇರದಂತೆ ನೋಡಿಕೊಳ್ಳಿ, ನಂತರ ನೀವು ಅದನ್ನು ನನ್ನ ಮೇಲೆ ಪ್ರಯೋಗಿಸಿರಿ. ನನಗೆ ಸ್ವಲ್ಪವೂ ಕಾಲಾವಕಾಶ ನೀಡಬೇಡಿ.

وَٱتۡلُ عَلَيۡهِمۡ نَبَأَ نُوحٍ إِذۡ قَالَ لِقَوۡمِهِۦ يَٰقَوۡمِ إِن كَانَ كَبُرَ عَلَيۡكُم مَّقَامِى وَتَذۡكِيرِى بِـَٔايَٰتِ ٱللَّهِ فَعَلَى ٱللَّهِ تَوَكَّلۡتُ فَأَجۡمِعُوٓاْ أَمۡرَكُمۡ وَشُرَكَآءَكُمۡ ثُمَّ لَا يَكُنۡ أَمۡرُكُمۡ عَلَيۡكُمۡ غُمَّةٗ ثُمَّ ٱقۡضُوٓاْ إِلَىَّ وَلَا تُنظِرُونِ ٧١

72. ಇದರ ನಂತರವೂ ನೀವು (ನನ್ನ ಸಂದೇಶಕ್ಕೆ ಕಿವಿಗೊಡದೆ) ವಿಮುಖರಾಗಿ ಹೋಗುವುದಾದರೆ, ನಾನು ನಿಮ್ಮಲ್ಲಿ ಯಾವುದೇ ಪ್ರತಿಫಲವನ್ನು ಬೇಡಿಲ್ಲ. ನನಗೆ ಪ್ರತಿಫಲ ನೀಡಬೇಕಾದವನು

فَإِن تَوَلَّيۡتُمۡ فَمَا سَأَلۡتُكُم مِّنۡ أَجۡرٍۖ إِنۡ أَجۡرِىَ إِلَّا عَلَى ٱللَّهِۖ وَأُمِرۡتُ أَنۡ أَكُونَ مِنَ

ಅಲ್ಲಾಹು ಮಾತ್ರ. ನಾನು ಮುಸಲ್ಮಾನರಲ್ಲಿ (ಅಲ್ಲಾಹನಿಗೆ
ಶರಣಾದವರಲ್ಲಿ) ಸೇರಬೇಕೆಂದು ನನಗೆ ಆಜ್ಞಾಪಿಸಲಾಗಿದೆ."

ٱلْمُسْلِمِينَ ﴿٧٢﴾

---

73. ಆದರೆ ಅವರು ನೂಹರನ್ನು ನಿಷೇಧಿಸಿದರು. ಆಗ ನಾವು
ನೂಹರನ್ನು ಮತ್ತು ನಾವೆಯಲ್ಲಿ ಅವರ ಜೊತೆಗಿದ್ದವರನ್ನು ರಕ್ಷಿಸಿ,
ಅವರನ್ನು (ಭೂಮಿಯಲ್ಲಿ) ಉತ್ತರಾಧಿಕಾರಿಗಳನ್ನಾಗಿ ಮಾಡಿದೆವು.
ನಮ್ಮ ವಚನಗಳನ್ನು ನಿಷೇಧಿಸಿದ ಜನರನ್ನು ನಾವು ಮುಳುಗಿಸಿ
ಕೊಂದೆವು. ಎಚ್ಚರಿಕೆ ನೀಡಲಾದ ಆ ಜನರ ಅಂತ್ಯವು ಹೇಗಿತ್ತು
ಎಂದು ನೋಡಿ.

فَكَذَّبُوهُ فَنَجَّيْنَٰهُ وَمَن مَّعَهُۥ فِى ٱلْفُلْكِ
وَجَعَلْنَٰهُمْ خَلَٰٓئِفَ وَأَغْرَقْنَا ٱلَّذِينَ كَذَّبُوا۟
بِـَٔايَٰتِنَا ۖ فَٱنظُرْ كَيْفَ كَانَ عَٰقِبَةُ ٱلْمُنذَرِينَ ﴿٧٣﴾

---

74. ನಂತರ, ಅವರ ಬಳಿಕ ನಾವು ಆಯಾ ಸಮುದಾಯಗಳಿಗೆ
ಅನೇಕ ಸಂದೇಶವಾಹಕರುಗಳನ್ನು ಕಳುಹಿಸಿದೆವು. ಆ ಸಂದೇ-
ಶವಾಹಕರುಗಳು ಸ್ಪಷ್ಟ ಸಾಕ್ಷ್ಯಾಧಾರಗಳೊಂದಿಗೆ ಅವರ ಬಳಿಗೆ
ಬಂದರು. ಆದರೂ, ಇದಕ್ಕೆ ಮೊದಲು ಅವರು ನಿಷೇಧಿಸಿದ ಆ
ಸಂಗತಿಯಲ್ಲಿ ವಿಶ್ವಾಸವಿಡಲು ಅವರು ಸಿದ್ಧರಾಗಲಿಲ್ಲ. ಈ ರೀತಿ
ನಾವು ಅತಿರೇಕಿಗಳ ಹೃದಯಗಳಿಗೆ ಮೊಹರು ಹಾಕುತ್ತೇವೆ.

ثُمَّ بَعَثْنَا مِنۢ بَعْدِهِۦ رُسُلًا إِلَىٰ قَوْمِهِمْ
فَجَآءُوهُم بِٱلْبَيِّنَٰتِ فَمَا كَانُوا۟ لِيُؤْمِنُوا۟ بِمَا
كَذَّبُوا۟ بِهِۦ مِن قَبْلُ ۚ كَذَٰلِكَ نَطْبَعُ عَلَىٰ قُلُوبِ
ٱلْمُعْتَدِينَ ﴿٧٤﴾

---

75. ನಂತರ, ಅವರ ಬಳಿಕ ನಾವು ಮೂಸಾ ಮತ್ತು ಹಾರೂನರನ್ನು
ನಮ್ಮ ದೃಷ್ಟಾಂತಗಳೊಂದಿಗೆ ಫರೋಹ ಹಾಗೂ ಅವನ
ಜನರ ಮುಖಂಡರ ಬಳಿಗೆ ಕಳುಹಿಸಿದೆವು. ಆದರೆ ಅವರು
ಅಹಂಕಾರದಿಂದ ವರ್ತಿಸಿದರು. ಅವರು ಅಪರಾಧಿಗಳಾದ
ಜನರಾಗಿದ್ದರು.

ثُمَّ بَعَثْنَا مِنۢ بَعْدِهِم مُّوسَىٰ وَهَٰرُونَ إِلَىٰ
فِرْعَوْنَ وَمَلَإِي۟هِۦ بِـَٔايَٰتِنَا فَٱسْتَكْبَرُوا۟ وَكَانُوا۟
قَوْمًا مُّجْرِمِينَ ﴿٧٥﴾

---

76. ನಮ್ಮ ಕಡೆಯ ಸತ್ಯವು ಅವರ ಬಳಿಗೆ ಬಂದಾಗ
ಅವರು ಹೇಳಿದರು: "ನಿಶ್ಚಯವಾಗಿಯೂ ಇದು ಸ್ಪಷ್ಟ
ಮಾಟಗಾರಿಕೆಯಾಗಿದೆ."

فَلَمَّا جَآءَهُمُ ٱلْحَقُّ مِنْ عِندِنَا قَالُوٓا۟ إِنَّ هَٰذَا
لَسِحْرٌ مُّبِينٌ ﴿٧٦﴾

---

77. ಮೂಸಾ ಹೇಳಿದರು: "ನೀವು ಈ ಸತ್ಯದ ಬಗ್ಗೆ ಅದು ನಿಮ್ಮ
ಬಳಿಗೆ ಬಂದಾಗ ಹೀಗೆ ಹೇಳುವುದೇ? ಇದು ಮಾಟಗಾರಿಕೆಯೇ?
ವಾಸ್ತವವಾಗಿ ಮಾಟಗಾರರು ಯಶಸ್ವಿಯಾಗುವುದಿಲ್ಲ."

قَالَ مُوسَىٰٓ أَتَقُولُونَ لِلْحَقِّ لَمَّا جَآءَكُمْ ۖ
أَسِحْرٌ هَٰذَا وَلَا يُفْلِحُ ٱلسَّٰحِرُونَ ﴿٧٧﴾

---

78. ಅವರು ಹೇಳಿದರು: "ನಮ್ಮ ಪೂರ್ವಜರು ಯಾವ ಮಾರ್ಗ-
ದಲ್ಲಿರುವುದನ್ನು ನಾವು ಕಂಡಿದ್ದೇವೆಯೋ ಆ ಮಾರ್ಗದಿಂದ
ನಮ್ಮನ್ನು ತಿರುಗಿಸಲು ಮತ್ತು ಭೂಮಿಯಲ್ಲಿ ನಿಮಗಿಬ್ಬರಿಗೆ ಶ್ರೇಷ್ಠತೆ
ದೊರೆಯುವಂತಾಗಲು ನೀವು ನಮ್ಮ ಬಳಿಗೆ ಬಂದಿದ್ದೀರಾ?
ನಾವು ನಿಮ್ಮಿಬ್ಬರಲ್ಲಿ ಎಂದಿಗೂ ವಿಶ್ವಾಸವಿಡುವುದಿಲ್ಲ."

قَالُوٓا۟ أَجِئْتَنَا لِتَلْفِتَنَا عَمَّا وَجَدْنَا عَلَيْهِ ءَابَآءَنَا
وَتَكُونَ لَكُمَا ٱلْكِبْرِيَآءُ فِى ٱلْأَرْضِ وَمَا نَحْنُ
لَكُمَا بِمُؤْمِنِينَ ﴿٧٨﴾

---

79. ಫರೋಹ ಹೇಳಿದನು: "ಅಗಾಧ ಜ್ಞಾನವಿರುವ ಎಲ್ಲಾ

وَقَالَ فِرْعَوْنُ ٱئْتُونِى بِكُلِّ سَٰحِرٍ عَلِيمٍ ﴿٧٩﴾

ಮಾಟಗಾರರನ್ನು ನನ್ನ ಬಳಿಗೆ ಕರೆತನ್ನಿ."

80. ಮಾಟಗಾರರು ಬಂದಾಗ ಮೂಸಾ ಅವರೊಡನೆ ಹೇಳಿದರು: "ನೀವು ಎಸೆಯುವುದನ್ನೆಲ್ಲಾ ಎಸೆಯಿರಿ."

فَلَمَّا جَآءَ ٱلسَّحَرَةُ قَالَ لَهُم مُّوسَىٰٓ أَلْقُوا۟ مَآ
أَنتُم مُّلْقُونَ ٨٠

81. ಅವರು ಎಸೆದಾಗ ಮೂಸಾ ಹೇಳಿದರು: "ನೀವು ತಂದಿರುವುದೆಲ್ಲವೂ ಮಾಟಗಳಾಗಿವೆ. ನಿಶ್ಚಯವಾಗಿಯೂ ಅಲ್ಲಾಹು ಅವೆಲ್ಲವನ್ನೂ ವಿಫಲಗೊಳಿಸುವನು. ನಿಶ್ಚಯವಾಗಿಯೂ ಕಿಡಿಗೇಡಿಗಳ ಕೃತ್ಯವನ್ನು ಅಲ್ಲಾಹು ಯಶಸ್ವಿಗೊಳಿಸುವುದಿಲ್ಲ.

فَلَمَّآ أَلْقَوْا۟ قَالَ مُوسَىٰ مَا جِئْتُم بِهِ ٱلسِّحْرُ ۖ
إِنَّ ٱللَّهَ سَيُبْطِلُهُۥٓ ۖ إِنَّ ٱللَّهَ لَا يُصْلِحُ عَمَلَ
ٱلْمُفْسِدِينَ ٨١

82. ಅಲ್ಲಾಹು ತನ್ನ ವಚನಗಳ ಮೂಲಕ ಸತ್ಯವನ್ನು ಸಾಬೀತುಪಡಿಸುವನು. ಅಪರಾಧಿಗಳು ಎಷ್ಟು ಅಸಹ್ಯಪಟ್ಟರೂ ಸಹ."

وَيُحِقُّ ٱللَّهُ ٱلْحَقَّ بِكَلِمَٰتِهِۦ وَلَوْ كَرِهَ
ٱلْمُجْرِمُونَ ٨٢

83. ಮೂಸಾರ ಜನರಲ್ಲಿ ಸೇರಿದ ಕೆಲವು ಯುವಕರ ಹೊರತು ಬೇರೆ ಯಾರೂ ಅವರಲ್ಲಿ ವಿಶ್ವಾಸವಿಡಲಿಲ್ಲ. ಅದೂ ಸಹ ಫರೋಹ ಮತ್ತು ಅವರ ಮುಖಂಡರು ಅವರನ್ನು ಹಿಂಸೆಗೆ ಗುರಿಯಾಗಿಸುವರೋ ಎಂಬ ಭಯದಿಂದ. ನಿಶ್ಚಯವಾಗಿಯೂ ಫರೋಹ ಭೂಮಿಯಲ್ಲಿ ದರ್ಪ ತೋರುತ್ತಿದ್ದನು. ನಿಶ್ಚಯವಾಗಿಯೂ ಅವನು ಹದ್ದು ಮೀರಿದವನಾಗಿದ್ದನು.

فَمَآ ءَامَنَ لِمُوسَىٰٓ إِلَّا ذُرِّيَّةٌ مِّن قَوْمِهِۦ
عَلَىٰ خَوْفٍ مِّن فِرْعَوْنَ وَمَلَإِي۟هِمْ أَن
يَفْتِنَهُمْ ۚ وَإِنَّ فِرْعَوْنَ لَعَالٍ فِى ٱلْأَرْضِ وَإِنَّهُۥ
لَمِنَ ٱلْمُسْرِفِينَ ٨٣

84. ಮೂಸಾ ಹೇಳಿದರು: "ಓ ನನ್ನ ಜನರೇ! ನೀವು ಅಲ್ಲಾಹನಲ್ಲಿ ವಿಶ್ವಾಸವಿಟ್ಟಿದ್ದರೆ ಅವನಲ್ಲಿ ಭರವಸೆಯಿಡಿ. ನೀವು ಮುಸಲ್ಮಾನರಾಗಿದ್ದರೆ."

وَقَالَ مُوسَىٰ يَٰقَوْمِ إِن كُنتُمْ ءَامَنتُم بِٱللَّهِ
فَعَلَيْهِ تَوَكَّلُوٓا۟ إِن كُنتُم مُّسْلِمِينَ ٨٤

85. ಆಗ ಅವರು ಹೇಳಿದರು: "ನಾವು ಅಲ್ಲಾಹನಲ್ಲಿ ಭರವಸೆಯಿಟ್ಟಿದ್ದೇವೆ. ಓ ನಮ್ಮ ಪರಿಪಾಲಕನೇ! ಈ ಅಕ್ರಮಿಗಳಾದ ಜನರಿಗೆ ನಮ್ಮನ್ನು ಪರೀಕ್ಷೆಯ ವಸ್ತುವಾಗಿ ಮಾಡಬೇಡ.

فَقَالُوا۟ عَلَى ٱللَّهِ تَوَكَّلْنَا رَبَّنَا لَا تَجْعَلْنَا فِتْنَةً
لِّلْقَوْمِ ٱلظَّٰلِمِينَ ٨٥

86. ನಿನ್ನ ದಯೆಯಿಂದ ನಮ್ಮನ್ನು ಸತ್ಯನಿಷೇಧಿಗಳಾದ ಜನರಿಂದ ರಕ್ಷಿಸು."

وَنَجِّنَا بِرَحْمَتِكَ مِنَ ٱلْقَوْمِ ٱلْكَٰفِرِينَ ٨٦

87. ಮೂಸಾ ಮತ್ತು ಅವರ ಸಹೋದರನಿಗೆ ನಾವು ದೇವವಾಣಿಯನ್ನು ನೀಡಿದೆವು: "ನೀವು ನಿಮ್ಮ ಜನರಿಗೆ ಈಜಿಪ್ಟಿನಲ್ಲಿ ವಾಸ್ತವ್ಯಗಳನ್ನು ಮಾಡಿಕೊಡಿ, ಮತ್ತು ನಿಮ್ಮ ಮನೆಗಳನ್ನು ಆರಾಧನಾಲಯಗಳಾಗಿ ಮಾಡಿ ನಮಾಝನ್ನು

وَأَوْحَيْنَآ إِلَىٰ مُوسَىٰ وَأَخِيهِ أَن تَبَوَّءَا لِقَوْمِكُمَا
بِمِصْرَ بُيُوتًا وَٱجْعَلُوا۟ بُيُوتَكُمْ قِبْلَةً وَأَقِيمُوا۟
ٱلصَّلَوٰةَ ۗ وَبَشِّرِ ٱلْمُؤْمِنِينَ ٨٧

ಸಂಸ್ಥಾಪಿಸಿರಿ. ಸತ್ಯವಿಶ್ವಾಸಿಗಳಿಗೆ ಶುಭವಾರ್ತೆಯನ್ನು ತಿಳಿಸಿ."[1]

---

88. ಮೂಸಾ ಹೇಳಿದರು: "ಓ ನಮ್ಮ ಪರಿಪಾಲಕನೇ! ನಿಶ್ಚಯವಾಗಿಯೂ ನೀನು ಫರೋಹ ಮತ್ತು ಅವನ ಜನರ ಮುಖಂಡರಿಗೆ ಇಹಲೋಕದಲ್ಲಿ ವೈಭವ ಮತ್ತು ಐಶ್ವರ್ಯವನ್ನು ನೀಡಿರುವೆ. ಓ ನಮ್ಮ ಪರಿಪಾಲಕನೇ! ಜನರನ್ನು ನಿನ್ನ ಮಾರ್ಗದಿಂದ ತಪ್ಪಿಸುವುದಕ್ಕಾಗಿ (ಅವರು ಅದನ್ನು ಬಳಸುತ್ತಾರೆ). ಓ ನಮ್ಮ ಪರಿಪಾಲಕನೇ! ಅವರ ಐಶ್ವರ್ಯವನ್ನು ನಾಶ ಮಾಡು ಮತ್ತು ಅವರ ಹೃದಯಗಳನ್ನು ಕಠೋರಗೊಳಿಸು. ಯಾತನಾಮಯ ಶಿಕ್ಷೆಯನ್ನು ನೋಡುವ ತನಕ ಅವರು ವಿಶ್ವಾಸವಿಡದಿರಲಿ."

وَقَالَ مُوسَىٰ رَبَّنَآ إِنَّكَ ءَاتَيۡتَ فِرۡعَوۡنَ وَمَلَأَهُۥ زِينَةٗ وَأَمۡوَٰلٗا فِي ٱلۡحَيَوٰةِ ٱلدُّنۡيَا رَبَّنَا لِيُضِلُّواْ عَن سَبِيلِكَۖ رَبَّنَا ٱطۡمِسۡ عَلَىٰٓ أَمۡوَٰلِهِمۡ وَٱشۡدُدۡ عَلَىٰ قُلُوبِهِمۡ فَلَا يُؤۡمِنُواْ حَتَّىٰ يَرَوُاْ ٱلۡعَذَابَ ٱلۡأَلِيمَ ﴿٨٨﴾

---

89. ಅಲ್ಲಾಹು ಹೇಳಿದನು: "ನಿಮ್ಮಿಬ್ಬರ ಪ್ರಾರ್ಥನೆಗೆ ಉತ್ತರ ನೀಡಲಾಗಿದೆ. ಆದ್ದರಿಂದ ನೀವಿಬ್ಬರೂ ದೃಢವಾಗಿ ನಿಲ್ಲಿರಿ ಮತ್ತು ತಿಳುವಳಿಕೆಯಿಲ್ಲದ ಜನರ ಮಾರ್ಗವನ್ನು ಹಿಂಬಾಲಿಸಬೇಡಿ."

قَالَ قَدۡ أُجِيبَت دَّعۡوَتُكُمَا فَٱسۡتَقِيمَا وَلَا تَتَّبِعَآنِّ سَبِيلَ ٱلَّذِينَ لَا يَعۡلَمُونَ ﴿٨٩﴾

---

90. ನಾವು ಇಸ್ರಾಯೇಲ್ ಮಕ್ಕಳನ್ನು ಸಮುದ್ರ ದಾಟಿಸಿದೆವು. ಆಗ ಫರೋಹ ಮತ್ತು ಅವನ ಸೈನ್ಯವು ದಬ್ಬಾಳಿಕೆ ಮತ್ತು ದ್ವೇಷದೊಂದಿಗೆ ಅವರನ್ನು ಹಿಂಬಾಲಿಸಿದರು. ಎಲ್ಲಿಯವರೆ-ಗೆಂದರೆ, ಅವನು ಮುಳುಗಿ ಸಾಯುವಂತಾದಾಗ ಹೇಳಿದನು: "ಇಸ್ರಾಯೇಲ್ ಮಕ್ಕಳು ನಂಬಿದ ದೇವನ (ಅಲ್ಲಾಹನ) ಹೊರತು ಆರಾಧಿಸಲು ಅರ್ಹರಾದ ಬೇರೆ ದೇವರಿಲ್ಲ ಎಂದು ನಾನು ವಿಶ್ವಾ-ಸವಿಟ್ಟಿದ್ದೇನೆ. ನಾನು ಮುಸಲ್ಮಾನರಲ್ಲಿ ಸೇರಿದ್ದೇನೆ."

۞وَجَٰوَزۡنَا بِبَنِيٓ إِسۡرَٰٓءِيلَ ٱلۡبَحۡرَ فَأَتۡبَعَهُمۡ فِرۡعَوۡنُ وَجُنُودُهُۥ بَغۡيٗا وَعَدۡوًاۖ حَتَّىٰٓ إِذَآ أَدۡرَكَهُ ٱلۡغَرَقُ قَالَ ءَامَنتُ أَنَّهُۥ لَآ إِلَٰهَ إِلَّا ٱلَّذِيٓ ءَامَنَتۡ بِهِۦ بَنُوٓاْ إِسۡرَٰٓءِيلَ وَأَنَا۠ مِنَ ٱلۡمُسۡلِمِينَ ﴿٩٠﴾

---

91. (ಅವನೊಡನೆ ಹೇಳಲಾಯಿತು): "ಈಗ ನೀನು ವಿಶ್ವಾಸವಿಡುವುದೇ? ಇದಕ್ಕೆ ಮೊದಲು ನೀನು ಆಜ್ಞೋಲ್ಲಂಘನೆ ಮಾಡಿದ್ದೆ ಮತ್ತು ಕಿಡಿಗೇಡಿಗಳಲ್ಲಿ ಸೇರಿದ್ದೆ.[2]

ءَآلۡـَٰٔنَ وَقَدۡ عَصَيۡتَ قَبۡلُ وَكُنتَ مِنَ ٱلۡمُفۡسِدِينَ ﴿٩١﴾

---

92. ಇಂದು ನಾವು ನಿನ್ನ ದೇಹವನ್ನು ಉಳಿಸುವೆವು.[3] ನಿನ್ನ ನಂತರ ಬರುವವರಿಗೆ ನೀನೊಂದು ನಿದರ್ಶನವಾಗುವುದಕ್ಕಾಗಿ. ನಿಶ್ಚಯವಾಗಿಯೂ ಜನರಲ್ಲಿ ಹೆಚ್ಚಿನವರು ನಮ್ಮ ನಿದರ್ಶನಗಳ

فَٱلۡيَوۡمَ نُنَجِّيكَ بِبَدَنِكَ لِتَكُونَ لِمَنۡ خَلۡفَكَ ءَايَةٗۚ وَإِنَّ كَثِيرٗا مِّنَ ٱلنَّاسِ عَنۡ ءَايَٰتِنَا لَغَٰفِلُونَ ﴿٩٢﴾

---

[1] ನಿಮ್ಮ ಮನೆಗಳನ್ನು ನಮಾಝ್ ಮಾಡುವ ಸ್ಥಳಗಳನ್ನಾಗಿ ಮಾಡಿ ಮತ್ತು ಅವುಗಳನ್ನು ಬೈತುಲ್ ಮುಕದ್ದಸ್‌ನ ದಿಕ್ಕಿಗೆ ತಿರುಗಿಸಿ. ಹೀಗೆ ಮಾಡುವುದರಿಂದ ನಿಮಗೆ ಹೊರಗಿನ ಆರಾಧನಾಲಯಗಳಿಗೆ ಹೋಗಿ ನಮಾಝ್ ಮಾಡಬೇಕಾದ ಅಗತ್ಯ ಬರುವುದಿಲ್ಲ. ಹೊರಗೆ ಹೋದರೆ ಅಲ್ಲಿ ಫರೋಹನ ಜನರು ನಿಮ್ಮನ್ನು ಹಿಂಸಿಸುವ ಸಾಧ್ಯತೆಯಿದೆ.

[2] ಈಗ ವಿಶ್ವಾಸವಿಟ್ಟು ಯಾವುದೇ ಪ್ರಯೋಜನವಿಲ್ಲ. ವಿಶ್ವಾಸವಿಡಬೇಕಾಗಿದ್ದ ಸಮಯದಲ್ಲಿ ನೀನು ಅಹಂಕಾರ ತೋರಿದ್ದೆ ಮತ್ತು ಅತಿರೇಕವೆಸಗಿದ್ದೆ.

[3] ಫರೋಹ ಸತ್ತನೆಂದು ಯಾರಿಗೂ ನಂಬಿಕೆ ಬರಲಿಲ್ಲ. ಆದ್ದರಿಂದ ಅಲ್ಲಾಹು ಸಮುದ್ರದೊಡನೆ ಅವನ ಶವವನ್ನು ದಡಕ್ಕೆ ಎಸೆಯಬೇಕೆಂದು ಆಜ್ಞಾಪಿಸಿದನು. ಆಗ ಎಲ್ಲರೂ ಅವನ ಶವವನ್ನು ನೋಡಿ ಖಾತ್ರಿಪಡಿಸಿಕೊಂಡರು. ಫರೋಹನ ಶವ ಈಗಲೂ ಈಜಿಪ್ಟಿನ ಮ್ಯೂಸಿಯಂನ-ಲ್ಲಿದೆಯೆಂದು ಹೇಳಲಾಗುತ್ತದೆ. ಸತ್ಯವೇನೆಂದು ಅಲ್ಲಾಹನೇ ಬಲ್ಲ.

ಬಗ್ಗೆ ನಿರ್ಲಕ್ಷ್ಯರಾಗಿದ್ದಾರೆ.”

93. ನಿಶ್ಚಯವಾಗಿಯೂ ನಾವು ಇಸ್ರಾಯೇಲ್ ಮಕ್ಕಳಿಗೆ ಅತ್ಯುತ್ತಮವಾದ ವಾಸ್ತವ್ಯವನ್ನು ಮಾಡಿಕೊಟ್ಟೆವು ಮತ್ತು ಅವರಿಗೆ ಶುದ್ಧ ವಸ್ತುಗಳನ್ನು ಆಹಾರವಾಗಿ ನೀಡಿದೆವು. ಜ್ಞಾನವು ಅವರ ಬಳಿಗೆ ಬರುವ ತನಕ ಅವರು ಭಿನ್ನರಾಗಲಿಲ್ಲ. ನಿಶ್ಚಯವಾಗಿಯೂ ತಮ್ಮ ಪರಿಪಾಲಕನು (ಅಲ್ಲಾಹು) ಅವರು ಭಿನ್ನರಾದ ವಿಷಯದ ಬಗ್ಗೆ ಪುನರುತ್ಥಾನ ದಿನದಂದು ತೀರ್ಪು ನೀಡುವನು.

وَلَقَدۡ بَوَّأۡنَا بَنِيٓ إِسۡرَٰٓءِيلَ مُبَوَّأَ صِدۡقٖ وَرَزَقۡنَٰهُم مِّنَ ٱلطَّيِّبَٰتِ فَمَا ٱخۡتَلَفُواْ حَتَّىٰ جَآءَهُمُ ٱلۡعِلۡمُۚ إِنَّ رَبَّكَ يَقۡضِي بَيۡنَهُمۡ يَوۡمَ ٱلۡقِيَٰمَةِ فِيمَا كَانُواْ فِيهِ يَخۡتَلِفُونَ ٩٣

94. ನಾವು ನಿಮಗೆ ಅವತೀರ್ಣಗೊಳಿಸಿದ ಸಂದೇಶದಲ್ಲಿ ನಿಮಗೇನಾದರೂ ಸಂಶಯವಿದ್ದರೆ, ನಿಮಗಿಂತ ಮೊದಲು ಗ್ರಂಥವನ್ನು ಪಠಿಸುತ್ತಿದ್ದವರೊಡನೆ ಕೇಳಿ ನೋಡಿ. ನಿಮ್ಮ ಬಳಿಗೆ ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಸತ್ಯವು ಬಂದಿದೆ. ಆದ್ದರಿಂದ ನೀವೆಂದೂ ಸಂಶಯಗ್ರಸ್ತರಲ್ಲಿ ಸೇರಬೇಡಿ.

فَإِن كُنتَ فِي شَكّٖ مِّمَّآ أَنزَلۡنَآ إِلَيۡكَ فَسۡـَٔلِ ٱلَّذِينَ يَقۡرَءُونَ ٱلۡكِتَٰبَ مِن قَبۡلِكَۚ لَقَدۡ جَآءَكَ ٱلۡحَقُّ مِن رَّبِّكَ فَلَا تَكُونَنَّ مِنَ ٱلۡمُمۡتَرِينَ ٩٤

95. ಅಲ್ಲಾಹನ ವಚನಗಳನ್ನು ನಿಷೇಧಿಸಿದವರಲ್ಲೂ ಸೇರಬೇಡಿ. ಹಾಗೇನಾದರೂ ಆದರೆ ನೀವು ನಷ್ಟ ಹೊಂದಿದವರಾಗುವಿರಿ.

وَلَا تَكُونَنَّ مِنَ ٱلَّذِينَ كَذَّبُواْ بِـَٔايَٰتِ ٱللَّهِ فَتَكُونَ مِنَ ٱلۡخَٰسِرِينَ ٩٥

96. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನ (ಅಲ್ಲಾಹನ) ಮಾತು ಯಾರ ವಿಷಯದಲ್ಲಿ ಖಾತ್ರಿಯಾಗಿದೆಯೋ ಅವರು ವಿಶ್ವಾಸವಿಡುವುದಿಲ್ಲ.

إِنَّ ٱلَّذِينَ حَقَّتۡ عَلَيۡهِمۡ كَلِمَتُ رَبِّكَ لَا يُؤۡمِنُونَ ٩٦

97. ಎಲ್ಲಾ ರೀತಿಯ ದೃಷ್ಟಾಂತಗಳು ಅವರ ಬಳಿಗೆ ಬಂದರೂ ಸಹ (ಅವರು ವಿಶ್ವಾಸವಿಡುವುದಿಲ್ಲ). ಎಲ್ಲಿಯವರೆಗೆಂದರೆ, ಯಾತನಾಮಯ ಶಿಕ್ಷೆಯನ್ನು ಅವರು ನೇರವಾಗಿ ನೋಡುವ ತನಕ.

وَلَوۡ جَآءَتۡهُمۡ كُلُّ ءَايَةٍ حَتَّىٰ يَرَوُاْ ٱلۡعَذَابَ ٱلۡأَلِيمَ ٩٧

98. ಯಾವುದೇ ಒಂದು ಊರು ಕೂಡ—ಅದರ ಜನರು ವಿಶ್ವಾಸವಿಟ್ಟು ಆ ವಿಶ್ವಾಸವು ಅವರಿಗೆ ಪ್ರಯೋಜನ ನೀಡಿದ ಇತಿಹಾಸವಿಲ್ಲ; ಯೂನುಸರ ಊರಿನ ಜನರ ಹೊರತು. ಅವರು ವಿಶ್ವಾಸವಿಟ್ಟಾಗ, ಇಹಲೋಕದ ನಾವು ಅವರಿಂದ ಅಪಮಾನಕರ ಶಿಕ್ಷೆಯನ್ನು ನಿವಾರಿಸಿದೆವು ಮತ್ತು ಒಂದು ಅವಧಿಯ ತನಕ ಅವರಿಗೆ (ಇಹಲೋಕದಲ್ಲಿ) ಸವಲತ್ತುಗಳನ್ನು ನೀಡಿದೆವು.[1]

فَلَوۡلَا كَانَتۡ قَرۡيَةٌ ءَامَنَتۡ فَنَفَعَهَآ إِيمَٰنُهَآ إِلَّا قَوۡمَ يُونُسَ لَمَّآ ءَامَنُواْ كَشَفۡنَا عَنۡهُمۡ عَذَابَ ٱلۡخِزۡيِ فِي ٱلۡحَيَوٰةِ ٱلدُّنۡيَا وَمَتَّعۡنَٰهُمۡ إِلَىٰ حِينٖ ٩٨

99. ನಿಮ್ಮ ಪರಿಪಾಲಕನು (ಅಲ್ಲಾಹು) ಇಚ್ಛಿಸಿದ್ದರೆ

وَلَوۡ شَآءَ رَبُّكَ لَأٓمَنَ مَن فِي ٱلۡأَرۡضِ كُلُّهُمۡ

[1] ಯೂನುಸ್ (ಅವರ ಮೇಲೆ ಶಾಂತಿಯಿರಲಿ) ಇರಾಕಿನ ನೀನೆವಾ ಎಂಬ ಊರಿಗೆ ಪ್ರವಾದಿಯಾಗಿ ಕಳುಹಿಸಲಾಗಿತ್ತು. ಆ ಊರಿನ ಜನರು ಮೊದಲು ಅವರ ಮಾತಿನಲ್ಲಿ ವಿಶ್ವಾಸವಿಡದಿದ್ದರೂ ನಂತರ ಆ ಊರಿನವರೆಲ್ಲರೂ ಅವರಲ್ಲಿ ವಿಶ್ವಾಸವಿಟ್ಟರು.

ಭೂಮಿಯಲ್ಲಿರುವವರೆಲ್ಲರೂ ಸಂಪೂರ್ಣವಾಗಿ ವಿಶ್ವಾಸವಿಡು-ತ್ತಿದ್ದರು. ಹಾಗಿರುವಾಗ, ಜನರು ಸತ್ಯವಿಶ್ವಾಸಿಗಳಾಗಲು ನೀವು ಅವರನ್ನು ಬಲವಂತಪಡಿಸುವಿರಾ?

جَمِيعًاۚ أَفَأَنتَ تُكۡرِهُ ٱلنَّاسَ حَتَّىٰ يَكُونُواْ مُؤۡمِنِينَ ﴿٩٩﴾

---

100. ಅಲ್ಲಾಹನ ಅಪ್ಪಣೆಯಿಲ್ಲದೆ ಯಾರಿಗೂ ಸತ್ಯವಿಶ್ವಾಸಿಯಾಗಲು ಸಾಧ್ಯವಿಲ್ಲ. ಅರ್ಥಮಾಡಿಕೊಳ್ಳದ ಜನರ ಮೇಲೆ ಅವನು ನಿಕೃಷ್ಟತೆಯನ್ನು ಹೇರಿ ಬಿಡುವನು.

وَمَا كَانَ لِنَفۡسٍ أَن تُؤۡمِنَ إِلَّا بِإِذۡنِ ٱللَّهِۚ وَيَجۡعَلُ ٱلرِّجۡسَ عَلَى ٱلَّذِينَ لَا يَعۡقِلُونَ ﴿١٠٠﴾

---

101. ಹೇಳಿರಿ: "ಭೂಮ್ಯಾಕಾಶಗಳಲ್ಲಿ ಏನೆಲ್ಲಾ ಇವೆಯೆಂದು ನೋಡಿರಿ." ವಿಶ್ವಾಸವಿಡದ ಜನರಿಗೆ ದೃಷ್ಟಾಂತಗಳು ಮತ್ತು ಎಚ್ಚರಿಕೆಗಳು ಯಾವುದೇ ಪ್ರಯೋಜನ ನೀಡುವುದಿಲ್ಲ.

قُلِ ٱنظُرُواْ مَاذَا فِي ٱلسَّمَٰوَٰتِ وَٱلۡأَرۡضِۚ وَمَا تُغۡنِي ٱلۡأٓيَٰتُ وَٱلنُّذُرُ عَن قَوۡمٖ لَّا يُؤۡمِنُونَ ﴿١٠١﴾

---

102. ಅವರಿಗಿಂತ ಮೊದಲು ಜೀವಿಸಿದ್ದ ಜನರಿಗೆ ಎದುರಾದಂತಹ ದಿನಗಳನ್ನೇ ಹೊರತು ಬೇರೇನಾದರೂ ಇವರು ಕಾಯುತ್ತಿದ್ದಾರೆಯೇ? ಹೇಳಿರಿ: "ನೀವು ಕಾಯಿರಿ. ನಿಶ್ಚಯವಾಗಿಯೂ ನಿಮ್ಮ ಜೊತೆಗೆ ಕಾಯುವವರಲ್ಲಿ ನಾನು ಕೂಡ ಇದ್ದೇನೆ."

فَهَلۡ يَنتَظِرُونَ إِلَّا مِثۡلَ أَيَّامِ ٱلَّذِينَ خَلَوۡاْ مِن قَبۡلِهِمۡۚ قُلۡ فَٱنتَظِرُوٓاْ إِنِّي مَعَكُم مِّنَ ٱلۡمُنتَظِرِينَ ﴿١٠٢﴾

---

103. ನಂತರ ನಾವು ನಮ್ಮ ಸಂದೇಶವಾಹಕರುಗಳನ್ನು ಮತ್ತು ಸತ್ಯ-ವಿಶ್ವಾಸಿಗಳನ್ನು ರಕ್ಷಿಸುವೆವು. ಈ ರೀತಿ ಸತ್ಯವಿಶ್ವಾಸಿಗಳನ್ನು ರಕ್ಷಿಸುವುದು ನಮ್ಮ ಕರ್ತವ್ಯವಾಗಿದೆ.

ثُمَّ نُنَجِّي رُسُلَنَا وَٱلَّذِينَ ءَامَنُواْۚ كَذَٰلِكَ حَقًّا عَلَيۡنَا نُنجِ ٱلۡمُؤۡمِنِينَ ﴿١٠٣﴾

---

104. ಹೇಳಿರಿ: "ಓ ಜನರೇ! ನನ್ನ ಧರ್ಮದ ಬಗ್ಗೆ ನೀವೇನಾದರೂ ಸಂಶಯದಲ್ಲಿದ್ದರೆ, ನೀವು ಅಲ್ಲಾಹನನ್ನು ಬಿಟ್ಟು ಆರಾಧಿಸುವ ನಿಮ್ಮ ದೇವರುಗಳನ್ನು ನಾನಂತೂ ಆರಾಧಿಸುವುದಿಲ್ಲ. ಆದರೆ ನಿಮ್ಮ ಆತ್ಮವನ್ನು ವಶಪಡಿಸುವ ಅಲ್ಲಾಹನನ್ನು ಮಾತ್ರ ನಾನು ಆರಾಧಿಸುತ್ತೇನೆ. ಸತ್ಯವಿಶ್ವಾಸಿಗಳೊಡನೆ ಸೇರಲು ನನಗೆ ಆಜ್ಞಾಪಿಸಲಾಗಿದೆ.

قُلۡ يَٰٓأَيُّهَا ٱلنَّاسُ إِن كُنتُمۡ فِي شَكّٖ مِّن دِينِي فَلَآ أَعۡبُدُ ٱلَّذِينَ تَعۡبُدُونَ مِن دُونِ ٱللَّهِ وَلَٰكِنۡ أَعۡبُدُ ٱللَّهَ ٱلَّذِي يَتَوَفَّىٰكُمۡۖ وَأُمِرۡتُ أَنۡ أَكُونَ مِنَ ٱلۡمُؤۡمِنِينَ ﴿١٠٤﴾

---

105. ಏಕನಿಷ್ಠನಾಗಿ ನಿನ್ನ ಮುಖವನ್ನು ಧರ್ಮದ ಕಡೆಗೆ ತಿರುಗಿಸು ಮತ್ತು ಎಂದಿಗೂ ಬಹುದೇವಾರಾಧಕರಲ್ಲಿ ಸೇರಬೇಡ ಎಂದು (ನನಗೆ ಆಜ್ಞಾಪಿಸಲಾಗಿದೆ)."

وَأَنۡ أَقِمۡ وَجۡهَكَ لِلدِّينِ حَنِيفٗا وَلَا تَكُونَنَّ مِنَ ٱلۡمُشۡرِكِينَ ﴿١٠٥﴾

---

106. ನೀವು ಅಲ್ಲಾಹನನ್ನು ಬಿಟ್ಟು ನಿಮಗೆ ಉಪಕಾರ ಅಥವಾ ತೊಂದರೆ ಮಾಡದ ಯಾರನ್ನೂ ಕರೆದು ಪ್ರಾರ್ಥಿಸಬೇಡಿ. ನೀವೇನಾದರೂ ಹಾಗೆ ಮಾಡಿದರೆ ನಿಶ್ಚಯವಾಗಿಯೂ ನೀವು ಅಕ್ರಮಿಗಳಲ್ಲಿ ಸೇರುವಿರಿ.

وَلَا تَدۡعُ مِن دُونِ ٱللَّهِ مَا لَا يَنفَعُكَ وَلَا يَضُرُّكَۖ فَإِن فَعَلۡتَ فَإِنَّكَ إِذٗا مِّنَ ٱلظَّٰلِمِينَ ﴿١٠٦﴾

---

107. ಅಲ್ಲಾಹು ನಿಮಗೇನಾದರೂ ತೊಂದರೆ ನೀಡಿದರೆ, ಅದನ್ನು

وَإِن يَمۡسَسۡكَ ٱللَّهُ بِضُرّٖ فَلَا كَاشِفَ لَهُۥٓ

إِلَّا هُوَ ۖ وَإِن يُرِدْكَ بِخَيْرٍ فَلَا رَآدَّ لِفَضْلِهِۦ ۚ يُصِيبُ بِهِۦ مَن يَشَآءُ مِنْ عِبَادِهِۦ ۚ وَهُوَ ٱلْغَفُورُ ٱلرَّحِيمُ ١٠٧

ಅವನ ಹೊರತು ನಿವಾರಿಸಲು ಯಾರಿಗೂ ಸಾಧ್ಯವಿಲ್ಲ. ಅವನು ನಿಮಗೇನಾದರೂ ಒಳಿತನ್ನು ಉದ್ದೇಶಿಸಿದರೆ, ಅವನ ಔದಾರ್ಯವನ್ನು ತಡೆಯಲು ಯಾರಿಗೂ ಸಾಧ್ಯವಿಲ್ಲ. ತನ್ನ ದಾಸರಲ್ಲಿ ಅವನು ಇಚ್ಛಿಸಿದವರಿಗೆ ಅದನ್ನು (ಔದಾರ್ಯವನ್ನು) ತಲುಪಿಸುತ್ತಾನೆ. ಅವನು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

---

قُلْ يَـٰٓأَيُّهَا ٱلنَّاسُ قَدْ جَآءَكُمُ ٱلْحَقُّ مِن رَّبِّكُمْ ۖ فَمَنِ ٱهْتَدَىٰ فَإِنَّمَا يَهْتَدِى لِنَفْسِهِۦ ۖ وَمَن ضَلَّ فَإِنَّمَا يَضِلُّ عَلَيْهَا ۖ وَمَآ أَنَا۠ عَلَيْكُم بِوَكِيلٍ ١٠٨

108. ಹೇಳಿರಿ: “ಓ ಜನರೇ! ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯಿಂದ ನಿಮ್ಮ ಬಳಿಗೆ ಸತ್ಯವು ಬಂದಿದೆ. ಆದ್ದರಿಂದ ಯಾರಾದರೂ ಸನ್ಮಾರ್ಗವನ್ನು ಸ್ವೀಕರಿಸಿದರೆ ಅವನು ಅವನ ಒಳಿತಿಗಾಗಿಯೇ ಅದನ್ನು ಸ್ವೀಕರಿಸುತ್ತಾನೆ. ಯಾರಾದರೂ ದುರ್ಮಾರ್ಗವನ್ನು ಆರಿಸಿದರೆ ಅವನು ಅವನ ಕೆಡುಕಿಗಾಗಿಯೇ ಅದನ್ನು ಆರಿಸುತ್ತಾನೆ. ನನಗೆ ನಿಮ್ಮ ಮೇಲೆ ಯಾವುದೇ ಅಧಿಕಾರವಿಲ್ಲ.”

---

وَٱتَّبِعْ مَا يُوحَىٰٓ إِلَيْكَ وَٱصْبِرْ حَتَّىٰ يَحْكُمَ ٱللَّهُ ۚ وَهُوَ خَيْرُ ٱلْحَـٰكِمِينَ ١٠٩

109. ನಿಮಗೆ ದೇವವಾಣಿಯಾಗಿ ನೀಡಲಾಗುವುದನ್ನು ಅನುಸರಿಸಿರಿ ಮತ್ತು ಅಲ್ಲಾಹು ತೀರ್ಪು ನೀಡುವ ತನಕ ತಾಳ್ಮೆಯಿಂದಿರಿ. ತೀರ್ಪು ನೀಡುವವರಲ್ಲಿ ಅವನು ಅತಿಶ್ರೇಷ್ಠನಾಗಿದ್ದಾನೆ.

# 11. ಹೂದ್

بِسْمِ ٱللَّهِ ٱلرَّحْمَـٰنِ ٱلرَّحِيمِ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

---

الٓر ۚ كِتَـٰبٌ أُحْكِمَتْ ءَايَـٰتُهُۥ ثُمَّ فُصِّلَتْ مِن لَّدُنْ حَكِيمٍ خَبِيرٍ ١

1. ಅಲಿಫ್, ಲಾಮ್, ರಾ. ಇದೊಂದು ಗ್ರಂಥವಾಗಿದ್ದು, ಇದರ ವಚನಗಳನ್ನು (ಕುಂದು-ಕೊರತೆಗಳು ಮತ್ತು ಪ್ರಮಾದಗಳಿಲ್ಲದ ರೀತಿಯಲ್ಲಿ) ಭದ್ರಗೊಳಿಸಲಾಗಿದೆ. ನಂತರ ಅವುಗಳನ್ನು ಸ್ಪಷ್ಟವಾಗಿ ವಿವರಿಸಲಾಗಿದೆ. ಇದು ವಿವೇಕಪೂರ್ಣನು ಮತ್ತು ಸೂಕ್ಷ್ಮಜ್ಞಾನಿಯಾದ ಅಲ್ಲಾಹನ ಕಡೆಯಿಂದ (ಅವತೀರ್ಣವಾಗಿದೆ).

---

أَلَّا تَعْبُدُوٓا۟ إِلَّا ٱللَّهَ ۚ إِنَّنِى لَكُم مِّنْهُ نَذِيرٌ وَبَشِيرٌ ٢

2. ನೀವು ಅಲ್ಲಾಹನ ಹೊರತು ಬೇರೆ ಯಾರನ್ನೂ ಆರಾಧಿಸಬಾರದು. ನಿಶ್ಚಯವಾಗಿಯೂ ನಾನು ನಿಮಗೆ ಅವನ ಕಡೆಯಿಂದ ಎಚ್ಚರಿಕೆ ನೀಡುವವನು ಮತ್ತು ಸುವಾರ್ತೆ ತಿಳಿಸುವವನಾಗಿದ್ದೇನೆ.

---

وَأَنِ ٱسْتَغْفِرُوا۟ رَبَّكُمْ ثُمَّ تُوبُوٓا۟ إِلَيْهِ

3. ನೀವು ನಿಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ಕ್ಷಮೆಯಾಚನೆ ಮಾಡಿರಿ. ನಂತರ ಪಶ್ಚಾತ್ತಾಪದಿಂದ ಅವನ ಕಡೆಗೆ ತಿರುಗಿರಿ.

ಅವನು ನಿಮಗೆ ಒಂದು ನಿರ್ದಿಷ್ಟ ಅವಧಿಯ ತನಕ ಉತ್ತಮ ಸವಲತ್ತುಗಳನ್ನು ನೀಡುವನು. ಹೆಚ್ಚು ಸತ್ಕರ್ಮ ಮಾಡುವವರಿಗೆ ಅವನು ಹೆಚ್ಚು ಪ್ರತಿಫಲವನ್ನು ನೀಡುವನು. ನೀವೇನಾದರೂ ಮುಖ ತಿರುಗಿಸಿ ನಡೆಯುವುದಾದರೆ, ನಿಶ್ಚಯವಾಗಿಯೂ ಒಂದು ಮಹಾ ದಿನದ ಶಿಕ್ಷೆಯು ನಿಮ್ಮ ಮೇಲೆರಗಬಹುದೆಂದು ನನಗೆ ಭಯವಾಗುತ್ತಿದೆ.

يُمَتِّعۡكُم مَّتَٰعًا حَسَنًا إِلَىٰٓ أَجَلٖ مُّسَمّٗى وَيُؤۡتِ كُلَّ ذِي فَضۡلٖ فَضۡلَهُۥۖ وَإِن تَوَلَّوۡاْ فَإِنِّيٓ أَخَافُ عَلَيۡكُمۡ عَذَابَ يَوۡمٖ كَبِيرٍ ٣

---

4. ನಿಮ್ಮೆಲ್ಲರನ್ನೂ ಅಲ್ಲಾಹನ ಬಳಿಗೇ ಮರಳಿಸಲಾಗುವುದು. ಅವನು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

إِلَى ٱللَّهِ مَرۡجِعُكُمۡۖ وَهُوَ عَلَىٰ كُلِّ شَيۡءٖ قَدِيرٌ ٤

---

5. ತಿಳಿಯಿರಿ! ಅವರು ತಮ್ಮ ಮಾತುಗಳನ್ನು (ಅಲ್ಲಾಹನಿಂದ) ಮುಚ್ಚಿಡುವುದಕ್ಕಾಗಿ ತಮ್ಮ ಎದೆಗಳನ್ನು ಮಡಚುತ್ತಾರೆ. ತಿಳಿಯಿರಿ! ಅವರು ತಮ್ಮ ಬಟ್ಟೆಗಳನ್ನು ಹೊದ್ದುಕೊಳ್ಳುವಾಗ ಅವರು ರಹಸ್ಯವಾಗಿಡುವುದನ್ನು ಮತ್ತು ಬಹಿರಂಗಪಡಿಸುವುದನ್ನು ಅಲ್ಲಾಹು ತಿಳಿಯುತ್ತಾನೆ. ನಿಶ್ಚಯವಾಗಿಯೂ ಅವನು ಹೃದಯಗಳಲ್ಲಿರುವುದನ್ನು ತಿಳಿಯುತ್ತಾನೆ.

أَلَآ إِنَّهُمۡ يَثۡنُونَ صُدُورَهُمۡ لِيَسۡتَخۡفُواْ مِنۡهُۚ أَلَا حِينَ يَسۡتَغۡشُونَ ثِيَابَهُمۡ يَعۡلَمُ مَا يُسِرُّونَ وَمَا يُعۡلِنُونَۚ إِنَّهُۥ عَلِيمُۢ بِذَاتِ ٱلصُّدُورِ ٥

---

6. ಭೂಮಿಯಲ್ಲಿರುವ ಎಲ್ಲಾ ಜೀವರಾಶಿಗಳಿಗೆ ಆಹಾರ ನೀಡುವ ಹೊಣೆ ಅಲ್ಲಾಹನದ್ದು. ಅವನು ಅವುಗಳ ವಾಸ್ತವ್ಯ ಸ್ಥಳವನ್ನು ಮತ್ತು ಅವುಗಳ ನಿಕ್ಷೇಪ ಸ್ಥಳವನ್ನು[1] ತಿಳಿಯುತ್ತಾನೆ. ಎಲ್ಲವೂ ಒಂದು ಸ್ಪಷ್ಟ ದಾಖಲೆಯಲ್ಲಿದೆ.

وَمَا مِن دَآبَّةٖ فِي ٱلۡأَرۡضِ إِلَّا عَلَى ٱللَّهِ رِزۡقُهَا وَيَعۡلَمُ مُسۡتَقَرَّهَا وَمُسۡتَوۡدَعَهَاۚ كُلّٞ فِي كِتَٰبٖ مُّبِينٖ ٦

---

7. ಭೂಮ್ಯಾಕಾಶಗಳನ್ನು ಆರು ದಿನಗಳಲ್ಲಿ ಸೃಷ್ಟಿಸಿದವನು ಅವನೇ. ಅವನ ಸಿಂಹಾಸನವು ನೀರಿನ ಮೇಲಿತ್ತು. ನಿಮ್ಮಲ್ಲಿ ಯಾರು ಅತ್ಯುತ್ತಮವಾಗಿ ಕರ್ಮವೆಸಗುತ್ತಾರೆಂದು ನಿಮ್ಮನ್ನು ಪರೀಕ್ಷಿಸುವುದಕ್ಕಾಗಿ. ನಿಶ್ಚಯವಾಗಿಯೂ ಮರಣಾನಂತರ ನಿಮ್ಮನ್ನು ಜೀವ ನೀಡಿ ಎಬ್ಬಿಸಲಾಗುವುದು ಎಂದು ನೀವು ಹೇಳಿದರೆ ಆ ಸತ್ಯನಿಷೇಧಿಗಳು ಹೇಳುತ್ತಾರೆ: “ಇದು ಸ್ಪಷ್ಟ ಮಾಟಗಾರಿಕೆಯಲ್ಲದೆ ಇನ್ನೇನೂ ಅಲ್ಲ.”

وَهُوَ ٱلَّذِي خَلَقَ ٱلسَّمَٰوَٰتِ وَٱلۡأَرۡضَ فِي سِتَّةِ أَيَّامٖ وَكَانَ عَرۡشُهُۥ عَلَى ٱلۡمَآءِ لِيَبۡلُوَكُمۡ أَيُّكُمۡ أَحۡسَنُ عَمَلٗاۗ وَلَئِن قُلۡتَ إِنَّكُم مَّبۡعُوثُونَ مِنۢ بَعۡدِ ٱلۡمَوۡتِ لَيَقُولَنَّ ٱلَّذِينَ كَفَرُوٓاْ إِنۡ هَٰذَآ إِلَّا سِحۡرٞ مُّبِينٞ ٧

---

8. ನಾವು ಅವರ ಶಿಕ್ಷೆಯನ್ನು ಒಂದು ನಿಶ್ಚಿತ ಅವಧಿಯ ತನಕ ಮುಂದೂಡಿದರೆ, ಅವರು ಕೇಳುವರು: “ಅದಕ್ಕೆ ತಡೆಯಾದದ್ದು ಏನು?” ತಿಳಿಯಿರಿ! ಆ ಶಿಕ್ಷೆಯು ಅವರ ಬಳಿಗೆ ಬರುವ ದಿನ ಅದು ಅವರಿಗೆ ತಟ್ಟದಂತೆ ಅವರಿಂದ

وَلَئِنۡ أَخَّرۡنَا عَنۡهُمُ ٱلۡعَذَابَ إِلَىٰٓ أُمَّةٖ مَّعۡدُودَةٖ لَّيَقُولُنَّ مَا يَحۡبِسُهُۥٓۗ أَلَا يَوۡمَ يَأۡتِيهِمۡ لَيۡسَ مَصۡرُوفًا عَنۡهُمۡ وَحَاقَ بِهِم مَّا كَانُواْ بِهِۦ

---

[1] ವಾಸ್ತವ್ಯ ಸ್ಥಳವೆಂದರೆ ತಾಯಿಯ ಗರ್ಭ ಮತ್ತು ನಿಕ್ಷೇಪಸ್ಥಳವೆಂದರೆ ತಂದೆಯ ಬೆನ್ನುಹುರಿ ಎಂದು ಹೇಳಲಾಗಿದೆ. ಇತರ ಕೆಲವು ವ್ಯಾಖ್ಯಾನಕಾರರ ಪ್ರಕಾರ ವಾಸ್ತವ್ಯ ಸ್ಥಳವೆಂದರೆ ಪ್ರಾಣಿಗಳು ಮತ್ತು ಮನುಷ್ಯರು ವಾಸಿಸುವ ಸ್ಥಳ ಮತ್ತು ನಿಕ್ಷೇಪಸ್ಥಳವೆಂದರೆ ಅವರು ಕೊನೆಯದಾಗಿ ಸೇರುವ ಸಮಾಧಿ ಇತ್ಯಾದಿ.

يَسۡتَهۡزِءُونَ ۝٨

ತಿರುಗಿಸಿ ಬಿಡಲಾಗುವುದಿಲ್ಲ. ಯಾವುದನ್ನು ಅವರು ತಮಾಷೆ ಮಾಡುತ್ತಿದ್ದರೋ ಅದು ಅವರನ್ನು ಆವರಿಸಿ ಬಿಡುವುದು.

---

وَلَئِنۡ أَذَقۡنَا ٱلۡإِنسَٰنَ مِنَّا رَحۡمَةٗ ثُمَّ نَزَعۡنَٰهَا مِنۡهُ
إِنَّهُۥ لَيَـُٔوسٞ كَفُورٞ ۝٩

9. ನಾವು ಮನುಷ್ಯನಿಗೆ ನಮ್ಮ ದಯೆಯ ರುಚಿಯನ್ನು ತೋರಿಸಿ, ನಂತರ ಅದನ್ನು ಅವನಿಂದ ಹಿಂದಕ್ಕೆ ಪಡೆದರೆ, ನಿಶ್ಚಯವಾಗಿಯೂ ಅವನು ಹತಾಶನು ಮತ್ತು ಕೃತಘ್ನನಾಗುತ್ತಾನೆ.

---

وَلَئِنۡ أَذَقۡنَٰهُ نَعۡمَآءَ بَعۡدَ ضَرَّآءَ مَسَّتۡهُ لَيَقُولَنَّ
ذَهَبَ ٱلسَّيِّـَٔاتُ عَنِّيٓۚ إِنَّهُۥ لَفَرِحٞ فَخُورٌ ۝١٠

10. ಅವನಿಗೆ ಕಷ್ಟ ಬಂದ ನಂತರ ನಾವು ಅವನಿಗೆ ಸುಖದ ರುಚಿಯನ್ನು ತೋರಿಸಿದರೆ, ನಿಶ್ಚಯವಾಗಿಯೂ ಅವನು ಹೇಳುತ್ತಾನೆ: "ನನ್ನ ಕಷ್ಟಗಳೆಲ್ಲವೂ ಮುಗಿದವು." ಅವನು ಹರ್ಷೋನ್ಮಾದಿತನು ಮತ್ತು ಬಡಾಯಿಕೋರನಾಗುವನು.

---

إِلَّا ٱلَّذِينَ صَبَرُواْ وَعَمِلُواْ ٱلصَّٰلِحَٰتِ أُوْلَٰٓئِكَ
لَهُم مَّغۡفِرَةٞ وَأَجۡرٞ كَبِيرٞ ۝١١

11. ಆದರೆ ತಾಳ್ಮೆಯಿಂದಿರುವವರು ಮತ್ತು ಸತ್ಕರ್ಮವೆಸಗುವವರು ಇದಕ್ಕೆ ಹೊರತಾಗಿದ್ದಾರೆ. ಅವರಿಗೆ ಕ್ಷಮೆ ಮತ್ತು ಮಹಾ ಪ್ರತಿಫಲವಿದೆ.

---

فَلَعَلَّكَ تَارِكُۢ بَعۡضَ مَا يُوحَىٰٓ إِلَيۡكَ وَضَآئِقُۢ
بِهِۦ صَدۡرُكَ أَن يَقُولُواْ لَوۡلَآ أُنزِلَ عَلَيۡهِ كَنزٌ أَوۡ
جَآءَ مَعَهُۥ مَلَكٌۚ إِنَّمَآ أَنتَ نَذِيرٞۚ وَٱللَّهُ عَلَىٰ كُلِّ
شَيۡءٖ وَكِيلٌ ۝١٢

12. "ಇವನ ಮೇಲೆ ಒಂದು ನಿಧಿಯನ್ನೇಕೆ ಇಳಿಸಲಾಗಿಲ್ಲ? ಅಥವಾ ಇವನೊಡನೆ ಒಬ್ಬ ದೇವದೂತರೇಕೆ ಬರಲಿಲ್ಲ" ಎಂಬ ಅವರ ಮಾತುಗಳನ್ನು ಕೇಳಿ ನೀವು ನಿಮಗೆ ನೀಡಲಾದ ದೇವವಾಣಿಗಳಲ್ಲಿ ಕೆಲವನ್ನು ತ್ಯಜಿಸಲೂಬಹುದು ಮತ್ತು ಅದರಿಂದ ನಿಮ್ಮ ಹೃದಯದಲ್ಲಿ ಇಕ್ಕಟ್ಟು ಅನುಭವವಾಗಲೂಬಹುದು. ಆದರೆ ನೆನಪಿಡಿ! ನೀವು ಒಬ್ಬ ಮುನ್ನೆಚ್ಚರಿಕೆಗಾರ ಮಾತ್ರ. ಅಲ್ಲಾಹು ಎಲ್ಲಾ ವಿಷಯಗಳಿಗೂ ಹೊಣೆಗಾರನಾಗಿದ್ದಾನೆ.

---

أَمۡ يَقُولُونَ ٱفۡتَرَىٰهُۖ قُلۡ فَأۡتُواْ بِعَشۡرِ سُوَرٖ مِّثۡلِهِۦ
مُفۡتَرَيَٰتٖ وَٱدۡعُواْ مَنِ ٱسۡتَطَعۡتُم مِّن دُونِ ٱللَّهِ
إِن كُنتُمۡ صَٰدِقِينَ ۝١٣

13. "ಇದನ್ನು ಅವರು (ಪ್ರವಾದಿ) ಸ್ವಯಂ ರಚಿಸಿ ತಂದಿದ್ದಾರೆ" ಎಂದು ಅವರು ಹೇಳುತ್ತಿದ್ದಾರೆಯೇ? ಹೇಳಿರಿ: "ಸರಿ, ಹಾಗಾದರೆ ಇದರಂತೆ ರಚಿಸಲಾದ ಹತ್ತು ಅಧ್ಯಾಯಗಳನ್ನು ತನ್ನಿರಿ. ಅಲ್ಲಾಹನನ್ನು ಬಿಟ್ಟು ನಿಮಗೆ ಸಾಧ್ಯವಾಗುವವರನ್ನೆಲ್ಲಾ ಸಹಾಯಕ್ಕಾಗಿ ಕರೆಯಿರಿ. ನೀವು ಸತ್ಯವಂತರಾಗಿದ್ದರೆ!"

---

فَإِلَّمۡ يَسۡتَجِيبُواْ لَكُمۡ فَٱعۡلَمُوٓاْ أَنَّمَآ أُنزِلَ
بِعِلۡمِ ٱللَّهِ وَأَن لَّآ إِلَٰهَ إِلَّا هُوَۖ فَهَلۡ أَنتُم
مُّسۡلِمُونَ ۝١٤

14. ಅವರೇನಾದರೂ ನಿಮ್ಮ ಕರೆಗೆ ಉತ್ತರಿಸದಿದ್ದರೆ, ತಿಳಿಯಿರಿ! ಇದು ಅಲ್ಲಾಹನ ಜ್ಞಾನದಿಂದಲೇ ಅವತೀರ್ಣವಾಗಿದೆ ಮತ್ತು ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ಈಗಲಾದರೂ ನೀವು ಮುಸಲ್ಮಾನರಾಗಲು ಸಿದ್ಧರಿದ್ದೀರಾ?

---

مَن كَانَ يُرِيدُ ٱلۡحَيَوٰةَ ٱلدُّنۡيَا وَزِينَتَهَا

15. ಯಾರು ಇಹಲೋಕ ಜೀವನವನ್ನು ಮತ್ತು ಅದರ

ಸೌಂದರ್ಯವನ್ನು ಬಯಸುತ್ತಾರೋ ಅವರಿಗೆ ನಾವು ಅವರ ಕರ್ಮಗಳ ಪ್ರತಿಫಲವನ್ನು ಇಹಲೋಕದಲ್ಲೇ ಪೂರ್ಣವಾಗಿ ನೀಡುವೆವು. ಇಲ್ಲಿ ಅವರಿಗೆ ಏನೂ ಕಡಿಮೆಯಾಗುವುದಿಲ್ಲ.

نُوَفِّ إِلَيۡهِمۡ أَعۡمَٰلَهُمۡ فِيهَا وَهُمۡ فِيهَا لَا يُبۡخَسُونَ ﴿١٥﴾

---

16. ಅವರಿಗೆ ಪರಲೋಕದಲ್ಲಿ ನರಕಾಗ್ನಿಯಲ್ಲದೆ ಬೇರೇನೂ ಇಲ್ಲ. ಇಹಲೋಕದಲ್ಲಿ ಅವರು ಮಾಡಿದ ಕರ್ಮಗಳೆಲ್ಲವೂ ವ್ಯರ್ಥವಾಗುವುವು. ಅವರು ಮಾಡುತ್ತಿದ್ದ ಕರ್ಮಗಳೆಲ್ಲವೂ ನಿಷ್ಫಲಯೋಜಕವಾಗುವುವು.

أُوْلَٰٓئِكَ ٱلَّذِينَ لَيۡسَ لَهُمۡ فِي ٱلۡأٓخِرَةِ إِلَّا ٱلنَّارُۖ وَحَبِطَ مَا صَنَعُواْ فِيهَا وَبَٰطِلٞ مَّا كَانُواْ يَعۡمَلُونَ ﴿١٦﴾

---

17. ಒಬ್ಬ ವ್ಯಕ್ತಿ ತನ್ನ ಪರಿಪಾಲಕನ (ಅಲ್ಲಾಹನ) ಕಡೆಯ ಸ್ಪಷ್ಟ ಪುರಾವೆಯ ಆಧಾರದಲ್ಲಿದ್ದಾನೆ.[1] ಅದರ ಹಿಂದೆ ಇನ್ನೊಂದು ಸಾಕ್ಷಿಯಿದೆ.[2] ಇದಕ್ಕೆ ಮೊದಲು ಮಾರ್ಗದರ್ಶಿ ಮತ್ತು ದಯೆಯಾಗಿದ್ದ ಮೂಸಾರ ಗ್ರಂಥವು ಕೂಡ ಆ ಸಾಕ್ಷಿಯನ್ನು ಬೆಂಬಲಿಸುತ್ತದೆ.[3] ಅವರು ಅದರಲ್ಲಿ ವಿಶ್ವಾಸವಿಡುತ್ತಾರೆ. ವಿವಿಧ ಪಂಗಡಗಳಲ್ಲಿ ಯಾರು ಅದನ್ನು ನಿಷೇಧಿಸುತ್ತಾರೋ ಅವರಿಗೆ ವಾಗ್ದಾನ ಮಾಡಲಾದ ಸ್ಥಳವು ನರಕಾಗ್ನಿಯಾಗಿದೆ. ಆದ್ದರಿಂದ ನೀವು ಅದರ (ಕುರ್‌ಆನ್‌ನ) ಬಗ್ಗೆ ಯಾವುದೇ ಸಂಶಯವನ್ನಿ-ಟ್ಟುಕೊಳ್ಳಬೇಡಿ. ನಿಶ್ಚಯವಾಗಿಯೂ ಅದು ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಸತ್ಯವಾಗಿದೆ. ಆದರೆ ಜನರಲ್ಲಿ ಹೆಚ್ಚಿನವರು ವಿಶ್ವಾಸವಿಡುವುದಿಲ್ಲ.

أَفَمَن كَانَ عَلَىٰ بَيِّنَةٖ مِّن رَّبِّهِۦ وَيَتۡلُوهُ شَاهِدٞ مِّنۡهُ وَمِن قَبۡلِهِۦ كِتَٰبُ مُوسَىٰٓ إِمَامٗا وَرَحۡمَةًۚ أُوْلَٰٓئِكَ يُؤۡمِنُونَ بِهِۦۚ وَمَن يَكۡفُرۡ بِهِۦ مِنَ ٱلۡأَحۡزَابِ فَٱلنَّارُ مَوۡعِدُهُۥۚ فَلَا تَكُ فِي مِرۡيَةٖ مِّنۡهُۚ إِنَّهُ ٱلۡحَقُّ مِن رَّبِّكَ وَلَٰكِنَّ أَكۡثَرَ ٱلنَّاسِ لَا يُؤۡمِنُونَ ﴿١٧﴾

---

18. ಅಲ್ಲಾಹನ ಮೇಲೆ ಸುಳ್ಳು ಆರೋಪಿಸುವವನಿಗಿಂತಲೂ ದೊಡ್ಡ ಅಕ್ರಮಿ ಯಾರು? ಅವರನ್ನು ಅವರ ಪರಿಪಾಲಕನ (ಅಲ್ಲಾಹನ) ಮುಂದೆ ಹಾಜರುಪಡಿಸಲಾಗುವುದು. ಆಗ ಸಾಕ್ಷಿಗಳು ಹೇಳುವರು: “ಇವರೇ ತಮ್ಮ ಪರಿಪಾಲಕನ (ಅಲ್ಲಾಹನ) ಹೆಸರಲ್ಲಿ ಸುಳ್ಳು ಹೇಳಿದವರು.” ತಿಳಿಯಿರಿ! ಅಕ್ರಮಿಗಳ ಮೇಲೆ ಅಲ್ಲಾಹನ ಶಾಪವಿದೆ.

وَمَنۡ أَظۡلَمُ مِمَّنِ ٱفۡتَرَىٰ عَلَى ٱللَّهِ كَذِبًاۚ أُوْلَٰٓئِكَ يُعۡرَضُونَ عَلَىٰ رَبِّهِمۡ وَيَقُولُ ٱلۡأَشۡهَٰدُ هَٰٓؤُلَآءِ ٱلَّذِينَ كَذَبُواْ عَلَىٰ رَبِّهِمۡۚ أَلَا لَعۡنَةُ ٱللَّهِ عَلَى ٱلظَّٰلِمِينَ ﴿١٨﴾

---

19. ಅವರು ಯಾರೆಂದರೆ, ಅಲ್ಲಾಹನ ಮಾರ್ಗದಿಂದ ಜನರನ್ನು ತಡೆಯುವವರು ಮತ್ತು ಅದರಲ್ಲಿ ವಕ್ರತೆಯನ್ನು ಹುಡುಕುವವರು.

ٱلَّذِينَ يَصُدُّونَ عَن سَبِيلِ ٱللَّهِ وَيَبۡغُونَهَا عِوَجٗا وَهُم بِٱلۡأٓخِرَةِ هُمۡ كَٰفِرُونَ ﴿١٩﴾

---

[1] ಸ್ಪಷ್ಟ ಪುರಾವೆ ಎಂದರೆ ಮನುಷ್ಯನ ಸಹಜ ಮನೋಧರ್ಮ (ಫಿತ್ರ). ಎಲ್ಲಾ ಮನುಷ್ಯರೂ ಸಹಜ ಮನೋಧರ್ಮದಲ್ಲೇ (ಏಕದೇವವಿಶ್ವಾಸ-ದಲ್ಲೇ) ಹುಟ್ಟುತ್ತಾರೆ. ನಂತರ ಅವರ ತಂದೆ-ತಾಯಿಗಳು ಅವರನ್ನು ಯಹೂದಿ, ಕ್ರೈಸ್ತ ಅಥವಾ ಅಗ್ನಿಪೂಜಕರನ್ನಾಗಿ ಮಾಡುತ್ತಾರೆ.

[2] ಅದರ ಹಿಂದೆ ಎಂದರೆ ಅದರ ಜೊತೆಗೆ. ಸಾಕ್ಷಿ ಎಂದರೆ ಪವಿತ್ರ ಕುರ್‌ಆನ್.

[3] ಇದರ ಅರ್ಥವೇನೆಂದರೆ ಒಬ್ಬ ವ್ಯಕ್ತಿ ತನ್ನ ಸಹಜ ಮನೋಧರ್ಮದ ಆಧಾರದಲ್ಲಿದ್ದು ಏಕೈಕ ದೇವನನ್ನು ಮಾತ್ರ ಆರಾಧಿಸುತ್ತಾನೆ. ಅವನ ಜೊತೆಗೆ ಅವನನ್ನು ಆ ಸಹಜ ಮನೋಧರ್ಮಕ್ಕೆ (ಏಕದೇವವಿಶ್ವಾಸಕ್ಕೆ) ಆಮಂತ್ರಿಸುವ ಪವಿತ್ರ ಕುರ್‌ಆನ್ ಇದೆ. ಮಾತ್ರವಲ್ಲ, ಇದಕ್ಕಿಂತ ಮುಂಚೆ ಅವತೀರ್ಣವಾದ ಮೂಸಾರ (ಅವರ ಮೇಲೆ ಶಾಂತಿಯಿರಲಿ) ಕೂಡ ಪವಿತ್ರ ಕುರ್‌ಆನನ್ನು ಅನುಸರಿಸಲು ಹೇಳುತ್ತದೆ. ಇಂತಹ ವ್ಯಕ್ತಿ ಖಂಡಿತ ಪವಿತ್ರ ಕುರ್‌ಆನ್‌ನಲ್ಲಿ ವಿಶ್ವಾಸವಿಡುತ್ತಾನೆ.

ಅವರು ಪರಲೋಕವನ್ನು ನಿಷೇಧಿಸಿದವರಾಗಿದ್ದಾರೆ.

| | | |
|---|---|---|
| 20. | ಇವರಿಗೆ ಭೂಮಿಯಲ್ಲಿ (ಅಲ್ಲಾಹನನ್ನು) ಸೋಲಿಸಲು ಸಾಧ್ಯವಿಲ್ಲ. ಅಲ್ಲಾಹನ ಹೊರತು ಅವರಿಗೆ ಬೇರೆ ರಕ್ಷಕರೂ ಇಲ್ಲ. ಅವರಿಗೆ ಇಮ್ಮಡಿ ಶಿಕ್ಷೆ ನೀಡಲಾಗುವುದು. ಇವರಿಗೆ ಕೇಳುವ ಶಕ್ತಿಯಿರಲಿಲ್ಲ ಮತ್ತು ಇವರು ನೋಡುತ್ತಲೂ ಇರಲಿಲ್ಲ. | أُوْلَـٰٓئِكَ لَمْ يَكُونُواْ مُعْجِزِينَ فِي ٱلْأَرْضِ وَمَا كَانَ لَهُم مِّن دُونِ ٱللَّهِ مِنْ أَوْلِيَآءَ يُضَـٰعَفُ لَهُمُ ٱلْعَذَابُ مَا كَانُواْ يَسْتَطِيعُونَ ٱلسَّمْعَ وَمَا كَانُواْ يُبْصِرُونَ ٢٠ |
| 21. | ಅವರೇ ಸ್ವಯಂ ಅವರನ್ನೇ ನಾಶ-ನಷ್ಟಕ್ಕೆ ಗುರಿಯಾಗಿಸಿದವರು. ಅವರು ಆರೋಪಿಸುತ್ತಿದ್ದ ವಿಷಯಗಳೆಲ್ಲವೂ ಅವರಿಂದ ಮರೆಯಾಗಿ ಬಿಡುವುವು. | أُوْلَـٰٓئِكَ ٱلَّذِينَ خَسِرُوٓاْ أَنفُسَهُمْ وَضَلَّ عَنْهُم مَّا كَانُواْ يَفْتَرُونَ ٢١ |
| 22. | ನಿಸ್ಸಂದೇಹವಾಗಿಯೂ ಅವರೇ ಪರಲೋಕದಲ್ಲಿ ಅತಿಹೆಚ್ಚು ನಷ್ಟಹೊಂದಿದವರು. | لَا جَرَمَ أَنَّهُمْ فِي ٱلْأٓخِرَةِ هُمُ ٱلْأَخْسَرُونَ ٢٢ |
| 23. | ನಿಶ್ಚಯವಾಗಿಯೂ ಸತ್ಯವಿಶ್ವಾಸಿಗಳು, ಸತ್ಕರ್ಮವೆಸಗಿದವರು ಮತ್ತು ತಮ್ಮ ಪರಿಪಾಲಕನಿಗೆ (ಅಲ್ಲಾಹನಿಗೆ) ವಿನಮ್ರರಾಗಿ-ರುವವರು ಯಾರೋ—ಅವರೇ ಸ್ವರ್ಗವಾಸಿಗಳು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. | إِنَّ ٱلَّذِينَ ءَامَنُواْ وَعَمِلُواْ ٱلصَّـٰلِحَـٰتِ وَأَخْبَتُوٓاْ إِلَىٰ رَبِّهِمْ أُوْلَـٰٓئِكَ أَصْحَـٰبُ ٱلْجَنَّةِ هُمْ فِيهَا خَـٰلِدُونَ ٢٣ |
| 24. | ಈ ಎರಡು ಪಂಗಡಗಳ (ಸತ್ಯವಿಶ್ವಾಸಿಗಳು ಮತ್ತು ಸತ್ಯನಿಷೇಧಿಗಳ) ಉದಾಹರಣೆಯು ಕಣ್ಣು ಕಾಣದವನು ಮತ್ತು ಕಿವಿ ಕೇಳದವನು ಹಾಗೂ ಕಣ್ಣು ಕಾಣುವವನು ಮತ್ತು ಕಿವಿ ಕೇಳುವವನಂತೆ. ಇವರಿಬ್ಬರೂ ಸಮಾನರಾಗುವರೇ? ಆದರೂ ನೀವು ಉಪದೇಶವನ್ನು ಸ್ವೀಕರಿಸುವುದಿಲ್ಲವೇ? | مَثَلُ ٱلْفَرِيقَيْنِ كَٱلْأَعْمَىٰ وَٱلْأَصَمِّ وَٱلْبَصِيرِ وَٱلسَّمِيعِ هَلْ يَسْتَوِيَانِ مَثَلًا أَفَلَا تَذَكَّرُونَ ٢٤ |
| 25. | ನಿಶ್ಚಯವಾಗಿಯೂ ನಾವು ನೂಹರನ್ನು ಅವರ ಜನರ ಬಳಿಗೆ ಕಳುಹಿಸಿದೆವು. (ಅವರು ಹೇಳಿದರು:) "ನಿಶ್ಚಯವಾಗಿಯೂ ನಾನು ನಿಮಗೆ ಸ್ಪಷ್ಟ ಮುನ್ನೆಚ್ಚರಿಕೆ ನೀಡುವವನಾಗಿದ್ದೇನೆ. | وَلَقَدْ أَرْسَلْنَا نُوحًا إِلَىٰ قَوْمِهِۦٓ إِنِّي لَكُمْ نَذِيرٌ مُّبِينٌ ٢٥ |
| 26. | ನೀವು ಅಲ್ಲಾಹನನ್ನು ಬಿಟ್ಟು ಬೇರೆ ಯಾರನ್ನೂ ಆರಾಧಿಸಬಾರದು. ನಿಶ್ಚಯವಾಗಿಯೂ ಯಾತನಾಮಯ ದಿನದ ಶಿಕ್ಷೆಯು ನಿಮ್ಮ ಮೇಲೆರಗಬಹುದೆಂದು ನನಗೆ ಭಯವಾಗುತ್ತಿದೆ." | أَن لَّا تَعْبُدُوٓاْ إِلَّا ٱللَّهَ إِنِّيٓ أَخَافُ عَلَيْكُمْ عَذَابَ يَوْمٍ أَلِيمٍ ٢٦ |
| 27. | ಆಗ ಅವರ ಜನರಲ್ಲಿದ್ದ ಸತ್ಯನಿಷೇಧಿಗಳ ಮುಖಂಡರು ಹೇಳಿದರು: "ನೀನು ನಮಗೆ ನಮ್ಮಂತಿರುವ ಒಬ್ಬ ಮನುಷ್ಯನಂತೆ ಕಾಣುತ್ತಿರುವೆ. ನಮ್ಮಲ್ಲಿನ ಅತ್ಯಂತ ಕೆಳವರ್ಗದ ಜನರು ಮಾತ್ರ ನಿನ್ನನ್ನು ಹಿಂಬಾಲಿಸಿದ್ದಾರೆಂದು ನಮಗೆ ಕಾಣುತ್ತಿದೆ—ಅದೂ ಕೂಡ ಯಾವುದೇ ವಿವೇಚನೆಯಿಲ್ಲದೆ. ನಿನಗೆ ನಮ್ಮ ಮೇಲೆ | فَقَالَ ٱلْمَلَأُ ٱلَّذِينَ كَفَرُواْ مِن قَوْمِهِۦ مَا نَرَىٰكَ إِلَّا بَشَرًا مِّثْلَنَا وَمَا نَرَىٰكَ ٱتَّبَعَكَ إِلَّا ٱلَّذِينَ هُمْ أَرَاذِلُنَا بَادِيَ ٱلرَّأْيِ وَمَا نَرَىٰ لَكُمْ عَلَيْنَا مِن فَضْلٍۭ بَلْ نَظُنُّكُمْ كَـٰذِبِينَ ٢٧ |

ಯಾವುದೇ ಶ್ರೇಷ್ಠತೆಯಿರುವುದು ನಮಗೆ ಕಾಣಿಸುತ್ತಿಲ್ಲ. ಬದಲಿಗೆ, ನೀನೊಬ್ಬ ಸುಳ್ಳುಗಾರನೆಂದೇ ನಾವು ಭಾವಿಸುತ್ತಿದ್ದೇವೆ.”

---

28. ನೂಹ್ ಹೇಳಿದರು: “ಓ ನನ್ನ ಜನರೇ! ನೀವು ಆಲೋಚಿಸಿ ನೋಡಿದ್ದೀರಾ? ನಾನು ನನ್ನ ಪರಿಪಾಲಕನ (ಅಲ್ಲಾಹನ) ಕಡೆಯ ಒಂದು ಸ್ಪಷ್ಟ ಆಧಾರದ ಮೇಲೆ ನಿಂತಿದ್ದೇನೆ ಮತ್ತು ಅವನು ತನ್ನ ದಯೆಯನ್ನು (ಪ್ರವಾದಿತ್ವವನ್ನು) ನನಗೆ ದಯಪಾಲಿಸಿದ್ದಾನೆ. ಆದರೂ ಅದನ್ನು ನೋಡಲು ನಿಮಗೆ ಸಾಧ್ಯವಾಗದಿದ್ದರೆ ನಾವು ಅದನ್ನು ಬಲವಂತವಾಗಿ ನಿಮ್ಮ ಮೇಲೆ ಹೇರಬೇಕೇ? ನೀವು ಅದನ್ನು ಇಷ್ಟಪಡದವರಾಗಿದ್ದೂ ಸಹ.

قَالَ يَٰقَوۡمِ أَرَءَيۡتُمۡ إِن كُنتُ عَلَىٰ بَيِّنَةٖ مِّن رَّبِّي وَءَاتَىٰنِي رَحۡمَةٗ مِّنۡ عِندِهِۦ فَعُمِّيَتۡ عَلَيۡكُمۡ أَنُلۡزِمُكُمُوهَا وَأَنتُمۡ لَهَا كَٰرِهُونَ ٢٨

---

29. ಓ ನನ್ನ ಜನರೇ! ಇದಕ್ಕೆ ಪ್ರತಿಫಲವಾಗಿ ನಾನು ನಿಮ್ಮಲ್ಲಿ ಹಣವನ್ನು ಕೇಳುವುದಿಲ್ಲ. ನನಗೆ ಪ್ರತಿಫಲ ನೀಡಬೇಕಾದ ಹೊಣೆಯಿರುವುದು ಅಲ್ಲಾಹನಿಗೆ ಮಾತ್ರ. ನಾನು ಸತ್ಯವಿಶ್ವಾಸಿಗಳನ್ನು ದೂರ ಮಾಡುವುದಿಲ್ಲ.[1] ನಿಶ್ಚಯವಾಗಿಯೂ ಅವರು ಅವರ ಪರಿಪಾಲಕನನ್ನು (ಅಲ್ಲಾಹನನ್ನು) ಭೇಟಿಯಾಗುವರು. ಆದರೆ ನಾನು ನಿಮ್ಮನ್ನು ತಿಳುವಳಿಕೆಯಿಲ್ಲದ ಜನರಂತೆ ಕಾಣುತ್ತಿದ್ದೇನೆ.

وَيَٰقَوۡمِ لَآ أَسۡـَٔلُكُمۡ عَلَيۡهِ مَالًاۖ إِنۡ أَجۡرِيَ إِلَّا عَلَى ٱللَّهِۚ وَمَآ أَنَا۠ بِطَارِدِ ٱلَّذِينَ ءَامَنُوٓاْۚ إِنَّهُم مُّلَٰقُواْ رَبِّهِمۡ وَلَٰكِنِّيٓ أَرَىٰكُمۡ قَوۡمٗا تَجۡهَلُونَ ٢٩

---

30. ಓ ನನ್ನ ಜನರೇ! ನಾನು ಅವರನ್ನು ದೂರ ಮಾಡಿದರೆ ಅಲ್ಲಾಹನ ಶಿಕ್ಷೆಯಿಂದ ನನ್ನನ್ನು ರಕ್ಷಿಸುವವರು ಯಾರು? ನೀವು ಉಪದೇಶವನ್ನು ಸ್ವೀಕರಿಸುವುದಿಲ್ಲವೇ?

وَيَٰقَوۡمِ مَن يَنصُرُنِي مِنَ ٱللَّهِ إِن طَرَدتُّهُمۡۚ أَفَلَا تَذَكَّرُونَ ٣٠

---

31. ಅಲ್ಲಾಹನ ಖಜಾನೆಗಳು ನನ್ನ ಬಳಿಯಿವೆ ಎಂದು ನಾನು ನಿಮಗೆ ಹೇಳುವುದಿಲ್ಲ. ನನಗೆ ಅದೃಶ್ಯ ಜ್ಞಾನವಿಲ್ಲ. ನಾನೊಬ್ಬ ದೇವದೂತನೆಂದು ನಾನು ಹೇಳುವುದಿಲ್ಲ. ನಿಮ್ಮ ಕಣ್ಣುಗಳು ಕೀಳಾಗಿ ಕಾಣುವ ಈ ಜನರಿಗೆ ಅಲ್ಲಾಹು ಒಳ್ಳೆಯದು ಮಾಡಲಾರನೆಂದು ನಾನು ಹೇಳುವುದಿಲ್ಲ. ಅವರ ಮನಸ್ಸಿನಲ್ಲಿ ಏನಿದೆಯೆಂದು ಅಲ್ಲಾಹು ಬಹಳ ಚೆನ್ನಾಗಿ ತಿಳಿದಿದ್ದಾನೆ. ನಾನು ಇಂತಹ ಮಾತುಗಳನ್ನು ಹೇಳಿದರೆ ನಿಶ್ಚಯವಾಗಿಯೂ ನಾನು ಅಕ್ರಮಿಗಳಲ್ಲಿ ಸೇರಿಬಿಡುವೆನು.”

وَلَآ أَقُولُ لَكُمۡ عِندِي خَزَآئِنُ ٱللَّهِ وَلَآ أَعۡلَمُ ٱلۡغَيۡبَ وَلَآ أَقُولُ إِنِّي مَلَكٞ وَلَآ أَقُولُ لِلَّذِينَ تَزۡدَرِيٓ أَعۡيُنُكُمۡ لَن يُؤۡتِيَهُمُ ٱللَّهُ خَيۡرًاۖ ٱللَّهُ أَعۡلَمُ بِمَا فِيٓ أَنفُسِهِمۡ إِنِّيٓ إِذٗا لَّمِنَ ٱلظَّٰلِمِينَ ٣١

---

32. ಜನರು ಹೇಳಿದರು: “ಓ ನೂಹ್! ನೀನು ನಮ್ಮೊಂದಿಗೆ ತರ್ಕಿಸಿರುವೆ. ಬಹಳ ಚೆನ್ನಾಗಿ ತರ್ಕಿಸಿರುವೆ. ನೀನು ಸತ್ಯವನ್ನೇ ಹೇಳುವವನಾಗಿದ್ದರೆ ನಮ್ಮನ್ನು ಹೆದರಿಸುವ ಆ ಶಿಕ್ಷೆಯನ್ನು ಈಗಲೇ ತಂದು ತೋರಿಸು.”

قَالُواْ يَٰنُوحُ قَدۡ جَٰدَلۡتَنَا فَأَكۡثَرۡتَ جِدَٰلَنَا فَأۡتِنَا بِمَا تَعِدُنَآ إِن كُنتَ مِنَ ٱلصَّٰدِقِينَ ٣٢

---

[1] ಆ ಕೆಳವರ್ಗದ ಜನರನ್ನು ನಿನ್ನ ಸಭೆಯಿಂದ ದೂರವಿಟ್ಟರೆ ನಾವು ನಿನ್ನ ಸಭೆಗೆ ಬರುತ್ತೇವೆ, ನಿನ್ನ ಮಾತನ್ನು ಕೇಳುತ್ತೇವೆ ಎಂದು ಮುಖಂಡರು ಹೇಳಿದಾಗ, ನೂಹ್ (ಅವರ ಮೇಲೆ ಶಾಂತಿಯಿರಲಿ) ಈ ಉತ್ತರವನ್ನು ನೀಡಿದರು.

33. ನೂಹ್ ಹೇಳಿದರು: “ಅದನ್ನು ಅಲ್ಲಾಹನೇ ತರುತ್ತಾನೆ. ಅವನು ತರಲಿಚ್ಛಿಸಿದರೆ! ನಿಮಗೆ ಅವನನ್ನು ಸೋಲಿಸಲು ಸಾಧ್ಯವಿಲ್ಲ.

قَالَ إِنَّمَا يَأۡتِيكُم بِهِ ٱللَّهُ إِن شَآءَ وَمَآ أَنتُم بِمُعۡجِزِينَ ﴿٣٣﴾

34. ಅಲ್ಲಾಹು ನಿಮ್ಮನ್ನು ದಾರಿತಪ್ಪಿಸಲು ಉದ್ದೇಶಿಸಿದರೆ, ನಾನು ನಿಮಗೆ ಉಪದೇಶ ಮಾಡಲು ಬಯಸಿದರೂ ನನ್ನ ಉಪದೇಶವು ನಿಮಗೆ ಉಪಕಾರ ಮಾಡುವುದಿಲ್ಲ. ಅವನೇ ನಿಮ್ಮ ಪರಿಪಾಲಕನು. ನಿಮ್ಮನ್ನು ಅವನ ಬಳಿಗೇ ಮರಳಿಸಲಾಗುವುದು.”

وَلَا يَنفَعُكُمۡ نُصۡحِيٓ إِنۡ أَرَدتُّ أَنۡ أَنصَحَ لَكُمۡ إِن كَانَ ٱللَّهُ يُرِيدُ أَن يُغۡوِيَكُمۡۚ هُوَ رَبُّكُمۡ وَإِلَيۡهِ تُرۡجَعُونَ ﴿٣٤﴾

35. “ಇದನ್ನು ಅವರು (ಪ್ರವಾದಿ) ಸ್ವಯಂ ರಚಿಸಿ ತಂದಿದ್ದಾರೆ” ಎಂದು ಅವರು ಹೇಳುತ್ತಿದ್ದಾರೆಯೇ? ಹೇಳಿರಿ: “ನಾನು ಇದನ್ನು ಸ್ವಯಂ ರಚಿಸಿ ತಂದಿದ್ದರೆ ನಾನು ಮಾಡಿದ ಅಪರಾಧವನ್ನು ನಾನೇ ಅನುಭವಿಸಬೇಕಾಗಿದೆ. ಅದರೆ, ನೀವು ಮಾಡುವ ಅಪರಾಧಗಳಿಂದ ನಾನು ಹೊಣೆಮುಕ್ತನಾಗಿದ್ದೇನೆ.”

أَمۡ يَقُولُونَ ٱفۡتَرَىٰهُۖ قُلۡ إِنِ ٱفۡتَرَيۡتُهُۥ فَعَلَيَّ إِجۡرَامِي وَأَنَا۠ بَرِيٓءٞ مِّمَّا تُجۡرِمُونَ ﴿٣٥﴾

36. ನೂಹರಿಗೆ ದೇವವಾಣಿ ನೀಡಲಾಯಿತು: “ಈಗಾಗಲೇ ವಿಶ್ವಾಸವಿಟ್ಟವರ ಹೊರತು ನಿಮ್ಮ ಜನರಲ್ಲಿ ಬೇರೆ ಯಾರೂ ವಿಶ್ವಾಸವಿಡುವುದಿಲ್ಲ; ಆದ್ದರಿಂದ ಅವರು ಮಾಡುತ್ತಿರುವ ದುಷ್ಕರ್ಮಗಳ ಬಗ್ಗೆ ನೀವು ಬೇಸರಗೊಳ್ಳಬೇಡಿ.

وَأُوحِيَ إِلَىٰ نُوحٍ أَنَّهُۥ لَن يُؤۡمِنَ مِن قَوۡمِكَ إِلَّا مَن قَدۡ ءَامَنَ فَلَا تَبۡتَئِسۡ بِمَا كَانُواْ يَفۡعَلُونَ ﴿٣٦﴾

37. ನಮ್ಮ ಕಣ್ಣುಗಳ ಮುಂದೆ ನಮ್ಮ ದೇವವಾಣಿಯಂತೆ ಒಂದು ನಾವೆಯನ್ನು ನಿರ್ಮಿಸಿರಿ. ಅಕ್ರಮಿಗಳ ಬಗ್ಗೆ ನನ್ನೊಂದಿಗೆ ಮಾತನಾಡಬೇಡಿ. ನಿಶ್ಚಯವಾಗಿಯೂ ಅವರು (ಜಲಪ್ರಳಯದಲ್ಲಿ) ಮುಳುಗಿ ನಾಶವಾಗುವರು.”

وَٱصۡنَعِ ٱلۡفُلۡكَ بِأَعۡيُنِنَا وَوَحۡيِنَا وَلَا تُخَٰطِبۡنِي فِي ٱلَّذِينَ ظَلَمُوٓاْ إِنَّهُم مُّغۡرَقُونَ ﴿٣٧﴾

38. ನೂಹ್ ನಾವೆಯನ್ನು ನಿರ್ಮಿಸುತ್ತಿದ್ದರು. ಅವರ ಜನರ ಮುಖಂಡರು ಅವರ ಬಳಿಯಿಂದ ಹಾದು ಹೋಗುವಾಗಲೆಲ್ಲಾ ಅವರನ್ನು ತಮಾಷೆ ಮಾಡುತ್ತಿದ್ದರು. ನೂಹ್ ಹೇಳಿದರು: “ನೀವು ನಮ್ಮನ್ನು ತಮಾಷೆ ಮಾಡುತ್ತೀರಲ್ಲವೇ? ನಿಶ್ಚಯವಾಗಿಯೂ ನೀವು ತಮಾಷೆ ಮಾಡಿದಂತೆಯೇ ನಾವು ಕೂಡ ನಿಮ್ಮನ್ನು ತಮಾಷೆ ಮಾಡುವೆವು.

وَيَصۡنَعُ ٱلۡفُلۡكَ وَكُلَّمَا مَرَّ عَلَيۡهِ مَلَأٞ مِّن قَوۡمِهِۦ سَخِرُواْ مِنۡهُۚ قَالَ إِن تَسۡخَرُواْ مِنَّا فَإِنَّا نَسۡخَرُ مِنكُمۡ كَمَا تَسۡخَرُونَ ﴿٣٨﴾

39. ಅವಮಾನಗೊಳಿಸುವ ಶಿಕ್ಷೆಯು ಯಾರಿಗೆ ಬರಲಿದೆ ಮತ್ತು ಯಾರ ಮೇಲೆ ಶಾಶ್ವತ (ಪರಲೋಕದ) ಶಿಕ್ಷೆ ಎರಗಲಿದೆಯೆಂದು ಸದ್ಯವೇ ನೀವು ತಿಳಿಯುವಿರಿ.”

فَسَوۡفَ تَعۡلَمُونَ مَن يَأۡتِيهِ عَذَابٞ يُخۡزِيهِ وَيَحِلُّ عَلَيۡهِ عَذَابٞ مُّقِيمٌ ﴿٣٩﴾

40. ಎಲ್ಲಿಯವರೆಗೆಂದರೆ, ನಮ್ಮ ಆಜ್ಞೆಯು ಬಂದು ಒಲೆ ಉಕ್ಕಿ ಹರಿದಾಗ, ನಾವು ಹೇಳಿದೆವು: “ಎಲ್ಲಾ ಜೀವಿಗಳ ಒಂದೊಂದು

حَتَّىٰٓ إِذَا جَآءَ أَمۡرُنَا وَفَارَ ٱلتَّنُّورُ قُلۡنَا ٱحۡمِلۡ

ಜೋಡಿಯನ್ನು (ಗಂಡು ಮತ್ತು ಹೆಣ್ಣು) ನಾವೆಯಲ್ಲಿ ಹತ್ತಿಸಿರಿ. ನಿಮ್ಮ ಕುಟುಂಬದವರಲ್ಲಿ ಯಾರ ಮೇಲೆ ಅಲ್ಲಾಹನ ಮಾತು ಖಾತ್ರಿಯಾಗಿದೆಯೋ ಅವರನ್ನು ಬಿಟ್ಟು ಉಳಿದವರನ್ನು ಹಾಗೂ ಸತ್ಯವಿಶ್ವಾಸಿಗಳನ್ನು ಕೂಡ ಹತ್ತಿಸಿರಿ." ಕೆಲವು ಬೆರಳೆಣಿಕೆಯ ಜನರು ಮಾತ್ರ ಅವರ ಜೊತೆಗೆ ವಿಶ್ವಾಸವಿಟ್ಟಿದ್ದರು.

فِيهَا مِن كُلٍّ زَوۡجَيۡنِ ٱثۡنَيۡنِ وَأَهۡلَكَ إِلَّا مَن
سَبَقَ عَلَيۡهِ ٱلۡقَوۡلُ وَمَنۡ ءَامَنَۚ وَمَآ ءَامَنَ مَعَهُۥٓ
إِلَّا قَلِيلٞ ٤٠

---

41. ನೂಹ್ ಹೇಳಿದರು: "ಈ ನಾವೆಯನ್ನು ಹತ್ತಿಕೊಳ್ಳಿ, ಇದು ಚಲಿಸುವುದು ಮತ್ತು ನಿಲ್ಲುವುದೆಲ್ಲವೂ ಅಲ್ಲಾಹನ ಹೆಸರಲ್ಲಿ. ನಿಶ್ಚಯವಾಗಿಯೂ ನನ್ನ ಪರಿಪಾಲಕನು (ಅಲ್ಲಾಹು) ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ."

وَقَالَ ٱرۡكَبُواْ فِيهَا بِسۡمِ ٱللَّهِ مَجۡر۪ىٰهَا وَمُرۡسَىٰهَآۚ
إِنَّ رَبِّي لَغَفُورٞ رَّحِيمٞ ٤١

---

42. ನಾವೆ ಅವರನ್ನು ಹೊತ್ತು ಬೆಟ್ಟಗಳಂತಿರುವ ಹೆದ್ದೆರೆಗಳ ಮಧ್ಯೆ ಚಲಿಸುತ್ತಿತ್ತು. ದೂರದ ಸ್ಥಳದಲ್ಲಿ ನಿಂತಿದ್ದ ಮಗನನ್ನು ಕರೆದು ನೂಹ್ ಹೇಳಿದರು: "ಓ ನನ್ನ ಮುದ್ದು ಕಂದಾ! ನಮ್ಮೊಂದಿಗೆ ಹತ್ತಿಕೋ. ನೀನು ಸತ್ಯನಿಷೇಧಿಗಳಲ್ಲಿ ಸೇರಬೇಡ."

وَهِيَ تَجۡرِي بِهِمۡ فِي مَوۡجٖ كَٱلۡجِبَالِ وَنَادَىٰ
نُوحٌ ٱبۡنَهُۥ وَكَانَ فِي مَعۡزِلٖ يَٰبُنَيَّ ٱرۡكَب مَّعَنَا
وَلَا تَكُن مَّعَ ٱلۡكَٰفِرِينَ ٤٢

---

43. ಅವನು ಹೇಳಿದನು: "ನಾನೊಂದು ಬೆಟ್ಟದಲ್ಲಿ ಆಶ್ರಯ ಪಡೆಯುವೆನು. ಅದು ನನ್ನನ್ನು ಪ್ರವಾಹದಿಂದ ರಕ್ಷಿಸುತ್ತದೆ." ನೂಹ್ ಹೇಳಿದರು: "ಇಂದು ಅಲ್ಲಾಹನ ಆಜ್ಞೆಯಿಂದ ಪಾರು ಮಾಡುವವರು ಯಾರೂ ಇಲ್ಲ. ಯಾರಿಗೆ ಅಲ್ಲಾಹು ದಯೆ ತೋರುತ್ತಾನೋ ಅವರು ಮಾತ್ರ ಪಾರಾಗುತ್ತಾರೆ." ಆಗ ಅವರಿಬ್ಬರ ಮಧ್ಯೆ ಹೆದ್ದೆರೆಯು ಅಡ್ಡವಾಗಿ ಎದ್ದು, ಅವನು ಮುಳುಗಿ ನಾಶವಾದವರಲ್ಲಿ ಸೇರಿದನು.

قَالَ سَـَٔاوِيٓ إِلَىٰ جَبَلٖ يَعۡصِمُنِي مِنَ ٱلۡمَآءِۚ قَالَ
لَا عَاصِمَ ٱلۡيَوۡمَ مِنۡ أَمۡرِ ٱللَّهِ إِلَّا مَن رَّحِمَۚ
وَحَالَ بَيۡنَهُمَا ٱلۡمَوۡجُ فَكَانَ مِنَ ٱلۡمُغۡرَقِينَ ٤٣

---

44. "ಓ ಭೂಮಿ! ನಿನ್ನ ನೀರನ್ನು ನುಂಗಿಬಿಡು! ಓ ಆಕಾಶ! ಮಳೆ ಸುರಿಸುವುದನ್ನು ನಿಲ್ಲಿಸು!" ಎಂದು ಆಜ್ಞಾಪಿಸಲಾಯಿತು. ಪ್ರವಾಹವು ತಗ್ಗಿತು ಮತ್ತು ಆಜ್ಞೆಯು ನೆರವೇರಿತು. ನಾವೆ ಜೂದಿ ಪರ್ವತದ ಮೇಲೆ ನಿಂತಿತು. "ಅಕ್ರಮವೆಸಗಿದ ಜನರು ನಾಶವಾಗಲಿ" ಎಂದು ಹೇಳಲಾಯಿತು.

وَقِيلَ يَٰٓأَرۡضُ ٱبۡلَعِي مَآءَكِ وَيَٰسَمَآءُ أَقۡلِعِي
وَغِيضَ ٱلۡمَآءُ وَقُضِيَ ٱلۡأَمۡرُ وَٱسۡتَوَتۡ عَلَى
ٱلۡجُودِيِّۖ وَقِيلَ بُعۡدٗا لِّلۡقَوۡمِ ٱلظَّٰلِمِينَ ٤٤

---

45. ನೂಹ್ ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಕರೆದು ಹೇಳಿದರು: "ಓ ನನ್ನ ಪರಿಪಾಲಕನೇ! ನನ್ನ ಮಗ ನನ್ನ ಕುಟುಂಬದವನು. ನಿಶ್ಚಯವಾಗಿಯೂ ನಿನ್ನ ವಾಗ್ದಾನವು ಸತ್ಯವಾಗಿದೆ. ನೀನು ತೀರ್ಪು ನೀಡುವವರಲ್ಲೇ ಅತಿಶ್ರೇಷ್ಠ ತೀರ್ಪುಗಾರನಾಗಿರುವೆ."

وَنَادَىٰ نُوحٞ رَّبَّهُۥ فَقَالَ رَبِّ إِنَّ ٱبۡنِي مِنۡ
أَهۡلِي وَإِنَّ وَعۡدَكَ ٱلۡحَقُّ وَأَنتَ أَحۡكَمُ
ٱلۡحَٰكِمِينَ ٤٥

---

46. ಅಲ್ಲಾಹು ಹೇಳಿದನು: "ಓ ನೂಹ್! ನಿಶ್ಚಯವಾಗಿಯೂ ಅವನು

قَالَ يَٰنُوحُ إِنَّهُۥ لَيۡسَ مِنۡ أَهۡلِكَۖ إِنَّهُۥ عَمَلٌ

غَيْرُ صَٰلِحٍۖ فَلَا تَسْـَٔلْنِ مَا لَيْسَ لَكَ بِهِۦ عِلْمٌۖ إِنِّيٓ أَعِظُكَ أَن تَكُونَ مِنَ ٱلْجَٰهِلِينَ ﴿٤٦﴾

ನಿಮ್ಮ ಕುಟುಂಬದವನಲ್ಲ. ಅವನ ಕೆಲಸಗಳಲ್ಲಿ ಯಾವುದೇ ಸತ್ಕರ್ಮಗಳಿಲ್ಲ. ನಿಮಗೆ ತಿಳುವಳಿಕೆಯಿಲ್ಲದ ವಿಷಯಗಳ ಬಗ್ಗೆ ನನ್ನಲ್ಲಿ ಪ್ರಶ್ನಿಸಬೇಡಿ. ನೀವು ಅವಿವೇಕಿಗಳಲ್ಲಿ ಸೇರಬಾರದೆಂದು ನಾನು ನಿಮಗೆ ಉಪದೇಶ ನೀಡುತ್ತಿದ್ದೇನೆ."

قَالَ رَبِّ إِنِّيٓ أَعُوذُ بِكَ أَنْ أَسْـَٔلَكَ مَا لَيْسَ لِي بِهِۦ عِلْمٌۖ وَإِلَّا تَغْفِرْ لِي وَتَرْحَمْنِيٓ أَكُن مِّنَ ٱلْخَٰسِرِينَ ﴿٤٧﴾

47. ನೂಹ್ ಹೇಳಿದರು: "ಓ ನನ್ನ ಪರಿಪಾಲಕನೇ! ನನಗೆ ತಿಳುವಳಿಕೆಯಿಲ್ಲದ ವಿಷಯಗಳ ಬಗ್ಗೆ ನಿನ್ನಲ್ಲಿ ಪ್ರಶ್ನಿಸುವುದರಿಂದ (ನನ್ನನ್ನು ರಕ್ಷಿಸಬೇಕೆಂದು) ನಾನು ನಿನ್ನಲ್ಲಿ ಅಭಯ ಕೋರುತ್ತೇನೆ. ನೀನು ನನ್ನನ್ನು ಕ್ಷಮಿಸದಿದ್ದರೆ ಮತ್ತು ನನಗೆ ದಯೆ ತೋರದಿದ್ದರೆ ನಾನು ನಷ್ಟಹೊಂದಿದವರಲ್ಲಿ ಸೇರುವುದು ನಿಶ್ಚಿತ."

قِيلَ يَٰنُوحُ ٱهْبِطْ بِسَلَٰمٍ مِّنَّا وَبَرَكَٰتٍ عَلَيْكَ وَعَلَىٰٓ أُمَمٍ مِّمَّن مَّعَكَۚ وَأُمَمٌ سَنُمَتِّعُهُمْ ثُمَّ يَمَسُّهُم مِّنَّا عَذَابٌ أَلِيمٌ ﴿٤٨﴾

48. ಅವರೊಡನೆ ಹೇಳಲಾಯಿತು: "ಓ ನೂಹ್! ನಮ್ಮ ಕಡೆಯ ಸುರಕ್ಷೆ ಮತ್ತು ಸಮೃದ್ಧಿಗಳೊಂದಿಗೆ ಇಳಿಯಿರಿ. (ಆ ಸಮೃದ್ಧಿಗಳು) ನಿಮಗೆ ಹಾಗೂ ನಿಮ್ಮ ಜೊತೆಯಲ್ಲಿರುವವರ ಅನೇಕ ಸಮುದಾಯಗಳಿಗೆ ಇದೆ. ಬೇರೆ ಕೆಲವು ಸಮುದಾಯಗಳಿವೆ. ಅವರಿಗೆ ನಾವು (ಇಹಲೋಕದಲ್ಲಿ ) ಸವಲತ್ತುಗಳನ್ನು ನೀಡುವೆವು. ನಂತರ ನಮ್ಮ ಕಡೆಯ ಯಾತನಾಮಯ ಶಿಕ್ಷೆಯು ಅವರನ್ನು ಸ್ಪರ್ಶಿಸುತ್ತದೆ."

تِلْكَ مِنْ أَنۢبَآءِ ٱلْغَيْبِ نُوحِيهَآ إِلَيْكَۖ مَا كُنتَ تَعْلَمُهَآ أَنتَ وَلَا قَوْمُكَ مِن قَبْلِ هَٰذَاۖ فَٱصْبِرْۖ إِنَّ ٱلْعَٰقِبَةَ لِلْمُتَّقِينَ ﴿٤٩﴾

49. (ಪ್ರವಾದಿಯವರೇ) ಇವೆಲ್ಲವೂ ಅದೃಶ್ಯ ಸಮಾಚಾರಗಳಾಗಿವೆ. ನಾವು ಇವುಗಳನ್ನು ದೇವವಾಣಿಯ ಮೂಲಕ ನಿಮಗೆ ತಿಳಿಸುತ್ತಿದ್ದೇವೆ. ಇದಕ್ಕೆ ಮೊದಲು ನೀವು ಅಥವಾ ನಿಮ್ಮ ಜನರು ಇದನ್ನು ತಿಳಿದಿರಲಿಲ್ಲ. ಆದ್ದರಿಂದ ನೀವು ತಾಳ್ಮೆ ವಹಿಸಿರಿ. ನಿಶ್ಚಯವಾಗಿಯೂ ಅತ್ಯುತ್ತಮ ಅಂತ್ಯವಿರುವುದು ದೇವಭಯವುಳ್ಳವರಿಗೆ ಮಾತ್ರ.

وَإِلَىٰ عَادٍ أَخَاهُمْ هُودًاۚ قَالَ يَٰقَوْمِ ٱعْبُدُوا۟ ٱللَّهَ مَا لَكُم مِّنْ إِلَٰهٍ غَيْرُهُۥٓۖ إِنْ أَنتُمْ إِلَّا مُفْتَرُونَ ﴿٥٠﴾

50. ನಾವು ಆದ್ ಗೋತ್ರದವರ ಬಳಿಗೆ ಅವರ ಸಹೋದರ ಹೂದರನ್ನು ಕಳುಹಿಸಿದೆವು. ಅವರು ಹೇಳಿದರು: "ಓ ನನ್ನ ಜನರೇ! ನೀವು ಅಲ್ಲಾಹನನ್ನು ಆರಾಧಿಸಿರಿ. ಅವನ ಹೊರತು ನಿಮಗೆ ಅರಾಧಿಸಲು ಅರ್ಹರಾದ ಬೇರೆ ದೇವರಿಲ್ಲ. ನೀವು ಕೇವಲ ಸುಳ್ಳು ಆರೋಪಿಸುವವರಾಗಿದ್ದೀರಿ."

يَٰقَوْمِ لَآ أَسْـَٔلُكُمْ عَلَيْهِ أَجْرًاۖ إِنْ أَجْرِيَ إِلَّا عَلَى ٱلَّذِي فَطَرَنِيٓۚ أَفَلَا تَعْقِلُونَ ﴿٥١﴾

51. ಓ ನನ್ನ ಜನರೇ! ಇದಕ್ಕಾಗಿ ನಾನು ನಿಮ್ಮಲ್ಲಿ ಯಾವುದೇ ಪ್ರತಿಫಲವನ್ನು ಕೇಳುವುದಿಲ್ಲ. ನನಗೆ ಪ್ರತಿಫಲ ನೀಡಬೇಕಾದ ಹೊಣೆಯಿರುವುದು ನನ್ನ ಸೃಷ್ಟಿಕರ್ತನಿಗೆ ಮಾತ್ರ. ನೀವು ಅರ್ಥಮಾಡಿಕೊಳ್ಳುವುದಿಲ್ಲವೇ?

52. ಓ ನನ್ನ ಜನರೇ! ನೀವು ನಿಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ಕ್ಷಮೆಯಾಚಿಸಿರಿ. ನಂತರ ಅವನ ಕಡೆಗೆ ಪಶ್ಚಾತ್ತಾಪದಿಂದ ತಿರುಗಿರಿ. ಅವನು ನಿಮಗೆ ಧಾರಾಕಾರವಾಗಿ ಮಳೆಯನ್ನು ಸುರಿಸುವನು. ನಿಮ್ಮ ಶಕ್ತಿಗೆ ಅವನು ಇನ್ನಷ್ಟು ಶಕ್ತಿಯನ್ನು ಹೆಚ್ಚಿಸುವನು. ನೀವು ಅಪರಾಧಿಗಳಾಗಿ ವಿಮುಖರಾಗಬೇಡಿ."

وَيَٰقَوۡمِ ٱسۡتَغۡفِرُواْ رَبَّكُمۡ ثُمَّ تُوبُوٓاْ إِلَيۡهِ يُرۡسِلِ
ٱلسَّمَآءَ عَلَيۡكُم مِّدۡرَارٗا وَيَزِدۡكُمۡ قُوَّةً إِلَىٰ
قُوَّتِكُمۡ وَلَا تَتَوَلَّوۡاْ مُجۡرِمِينَ ٥٢

53. ಜನರು ಹೇಳಿದರು: "ಓ ಹೂದ್! ನೀನು ಯಾವುದೇ ಸ್ಪಷ್ಟ ಸಾಕ್ಷ್ಯವನ್ನು ತಂದು ತೋರಿಸಿಲ್ಲ. ನಿನ್ನ ಮಾತನ್ನು ಕೇಳಿ ನಾವು ನಮ್ಮ ದೇವರುಗಳನ್ನು ತೊರೆಯುವುದಿಲ್ಲ. ನಾವು ನಿನ್ನಲ್ಲಿ ವಿಶ್ವಾಸವಿಡುವುದೂ ಇಲ್ಲ.

قَالُواْ يَٰهُودُ مَا جِئۡتَنَا بِبَيِّنَةٖ وَمَا نَحۡنُ بِتَارِكِيٓ
ءَالِهَتِنَا عَن قَوۡلِكَ وَمَا نَحۡنُ لَكَ بِمُؤۡمِنِينَ ٥٣

54. ನೀನು ನಮ್ಮ ಕೆಲವು ದೇವರುಗಳ ಕೆಟ್ಟ ವಶೀಕರಣಕ್ಕೆ ಒಳಗಾಗಿದ್ದೀಯಾ ಎಂದು ಮಾತ್ರ ನಮಗೆ ಹೇಳಲಿಕ್ಕಿರುವುದು." ಹೂದ್ ಹೇಳಿದರು: "ನೀವು (ಅಲ್ಲಾಹನೊಂದಿಗೆ) ಸಹಭಾಗಿಯಾಗಿ ಮಾಡುತ್ತಿರುವ ಎಲ್ಲಾ ದೇವರುಗಳಿಂದಲೂ ನಾನು ಸಂಪೂರ್ಣ ದೂರವಾಗಿದ್ದೇನೆಂದು ಅಲ್ಲಾಹನನ್ನು ಸಾಕ್ಷಿಯಾಗಿಟ್ಟು ಹೇಳುತ್ತೇನೆ. ನೀವೂ ಅದಕ್ಕೆ ಸಾಕ್ಷಿಗಳಾಗಿರಿ.

إِن نَّقُولُ إِلَّا ٱعۡتَرَىٰكَ بَعۡضُ ءَالِهَتِنَا بِسُوٓءٖۗ
قَالَ إِنِّيٓ أُشۡهِدُ ٱللَّهَ وَٱشۡهَدُوٓاْ أَنِّي بَرِيٓءٞ مِّمَّا
تُشۡرِكُونَ ٥٤

55. ಅಲ್ಲಾಹನ ಹೊರತು. ನೀವೆಲ್ಲರೂ ಸೇರಿ ನನ್ನ ವಿರುದ್ಧ ತಂತ್ರ ಪ್ರಯೋಗಿಸಿರಿ. ನಂತರ ನನಗೆ ಸ್ವಲ್ಪವೂ ಕಾಲಾವಕಾಶ ನೀಡಬೇಡಿ.

مِن دُونِهِۦۖ فَكِيدُونِي جَمِيعٗا ثُمَّ لَا تُنظِرُونِ ٥٥

56. ನಾನು ನನ್ನ ಮತ್ತು ನಿಮ್ಮ ಪರಿಪಾಲಕನಾದ ಅಲ್ಲಾಹನಲ್ಲಿ ಭರವಸೆಯಿಟ್ಟಿದ್ದೇನೆ. ಎಲ್ಲಾ ಜೀವರಾಶಿಗಳ ಮುಂದಲೆಯು ಅವನ ಹಿಡಿತದಲ್ಲಿದೆ. ನಿಶ್ಚಯವಾಗಿಯೂ ನನ್ನ ಪರಿಪಾಲಕನು (ಅಲ್ಲಾಹು) ಸರಿಯಾದ ಮಾರ್ಗದಲ್ಲಿದ್ದಾನೆ.

إِنِّي تَوَكَّلۡتُ عَلَى ٱللَّهِ رَبِّي وَرَبِّكُمۚ مَّا مِن دَآبَّةٍ
إِلَّا هُوَ ءَاخِذُۢ بِنَاصِيَتِهَآۚ إِنَّ رَبِّي عَلَىٰ صِرَٰطٖ
مُّسۡتَقِيمٖ ٥٦

57. ನೀವು ವಿಮುಖರಾಗುವುದಾದರೆ, ನಾನಂತೂ ನಿಮಗೆ ತಲುಪಿಸಬೇಕೆಂದು ಕಳುಹಿಸಲಾದ ಸಂದೇಶಗಳನ್ನು ನಿಮಗೆ ತಲುಪಿಸಿದ್ದೇನೆ. ನನ್ನ ಪರಿಪಾಲಕನು (ಅಲ್ಲಾಹು) ನಿಮ್ಮ ಹೊರತಾದ ಬೇರೆ ಜನರನ್ನು ಉತ್ತರಾಧಿಕಾರಿಗಳಾಗಿ ತರುವನು. ಅವನಿಗೆ ಯಾವುದೇ ತೊಂದರೆ ಮಾಡಲು ನಿಮಗೆ ಸಾಧ್ಯವಿಲ್ಲ. ನಿಶ್ಚಯವಾಗಿಯೂ ನನ್ನ ಪರಿಪಾಲಕನು (ಅಲ್ಲಾಹು) ಎಲ್ಲಾ ವಸ್ತುಗಳ ಸಂರಕ್ಷಕನಾಗಿದ್ದಾನೆ."

فَإِن تَوَلَّوۡاْ فَقَدۡ أَبۡلَغۡتُكُم مَّآ أُرۡسِلۡتُ بِهِۦٓ
إِلَيۡكُمۡۚ وَيَسۡتَخۡلِفُ رَبِّي قَوۡمًا غَيۡرَكُمۡ
وَلَا تَضُرُّونَهُۥ شَيۡـًٔاۚ إِنَّ رَبِّي عَلَىٰ كُلِّ
شَيۡءٍ حَفِيظٞ ٥٧

58. ನಮ್ಮ ಆಜ್ಞೆಯು ಬಂದಾಗ ನಾವು ಹೂದರನ್ನು ಮತ್ತು ಅವರ ಜೊತೆಯಲ್ಲಿದ್ದ ಸತ್ಯವಿಶ್ವಾಸಿಗಳನ್ನು ನಮ್ಮ ದಯೆಯಿಂದ

وَلَمَّا جَآءَ أَمۡرُنَا نَجَّيۡنَا هُودٗا وَٱلَّذِينَ
ءَامَنُواْ مَعَهُۥ بِرَحۡمَةٖ مِّنَّا وَنَجَّيۡنَٰهُم مِّنۡ

عَذَابٍ غَلِيظٖ ٥٨

ರಕ್ಷಿಸಿದೆವು. ನಾವು ಅವರನ್ನು ಕಠೋರ ಶಿಕ್ಷೆಯಿಂದ ಪಾರು ಮಾಡಿದೆವು.

---

وَتِلۡكَ عَادٞۖ جَحَدُواْ بِـَٔايَٰتِ رَبِّهِمۡ وَعَصَوۡاْ رُسُلَهُۥ وَٱتَّبَعُوٓاْ أَمۡرَ كُلِّ جَبَّارٍ عَنِيدٖ ٥٩

59. ಅವರೇ ಆದ್ ಗೋತ್ರದವರು. ಅವರು ಅವರ ಪರಿಪಾಲಕನ (ಅಲ್ಲಾಹನ) ವಚನಗಳನ್ನು ತಿರಸ್ಕರಿಸಿದರು, ಅವನ ಸಂದೇಶವಾ-ಹಕರನ್ನು ನಿಷೇಧಿಸಿದರು ಮತ್ತು ಎಲ್ಲಾ ದುಷ್ಟ ಸ್ವೇಚ್ಛಾಚಾರಿಗಳನ್ನು ಹಿಂಬಾಲಿಸಿದರು.

---

وَأُتۡبِعُواْ فِي هَٰذِهِ ٱلدُّنۡيَا لَعۡنَةٗ وَيَوۡمَ ٱلۡقِيَٰمَةِۗ أَلَآ إِنَّ عَادٗا كَفَرُواْ رَبَّهُمۡۗ أَلَا بُعۡدٗا لِّعَادٖ قَوۡمِ هُودٖ ٦٠

60. ಇಹಲೋಕದಲ್ಲೂ ಪುನರುತ್ಥಾನ ದಿನದಲ್ಲೂ ಶಾಪವು ಅವರನ್ನು ಹಿಂಬಾಲಿಸುವುದು. ತಿಳಿಯಿರಿ! ನಿಶ್ಚಯವಾಗಿಯೂ ಆದ್ ಗೋತ್ರದವರು ಅವರ ಪರಿಪಾಲಕನನ್ನು (ಅಲ್ಲಾಹನನ್ನು) ನಿಷೇಧಿಸಿದರು. ತಿಳಿಯಿರಿ! ಹೂದರ ಜನತೆಯಾಗಿದ್ದ ಆದ್ ಗೋತ್ರದವರು (ಅಲ್ಲಾಹನ ದಯೆಯಿಂದ) ದೂರವಾಗಿದ್ದಾರೆ.

---

وَإِلَىٰ ثَمُودَ أَخَاهُمۡ صَٰلِحٗاۚ قَالَ يَٰقَوۡمِ ٱعۡبُدُواْ ٱللَّهَ مَا لَكُم مِّنۡ إِلَٰهٍ غَيۡرُهُۥۖ هُوَ أَنشَأَكُم مِّنَ ٱلۡأَرۡضِ وَٱسۡتَعۡمَرَكُمۡ فِيهَا فَٱسۡتَغۡفِرُوهُ ثُمَّ تُوبُوٓاْ إِلَيۡهِۚ إِنَّ رَبِّي قَرِيبٞ مُّجِيبٞ ٦١

61. ನಾವು ಸಮೂದ್ ಗೋತ್ರದವರ ಬಳಿಗೆ ಅವರ ಸಹೋದರ ಸ್ವಾಲಿಹರನ್ನು ಕಳುಹಿಸಿದೆವು. ಅವರು ಹೇಳಿದರು: “ಓ ನನ್ನ ಜನರೇ! ನೀವು ಅಲ್ಲಾಹನನ್ನು ಆರಾಧಿಸಿರಿ. ಅವನ ಹೊರತು ನಿಮಗೆ ಅರಾಧಿಸಲು ಅರ್ಹರಾದ ಬೇರೆ ದೇವರಿಲ್ಲ. ಅವನು ನಿಮ್ಮನ್ನು ಭೂಮಿಯಿಂದ ಸೃಷ್ಟಿಸಿದನು ಮತ್ತು ಅಲ್ಲೇ ನಿಮಗೆ ವಾಸ್ತವ್ಯವನ್ನು ಮಾಡಿಕೊಟ್ಟನು. ಆದ್ದರಿಂದ ಅವನಲ್ಲಿ ಕ್ಷಮೆಯಾಚಿಸಿರಿ. ನಂತರ ಅವನ ಕಡೆಗೆ ಪಶ್ಚಾತ್ತಾಪದಿಂದ ತಿರುಗಿರಿ. ನಿಶ್ಚಯವಾಗಿಯೂ ನನ್ನ ಪರಿಪಾಲಕನು (ಅಲ್ಲಾಹು) ಬಹಳ ಸಮೀಪದಲ್ಲಿರುವವನು ಮತ್ತು (ಪ್ರಾರ್ಥನೆಗೆ) ಉತ್ತರ ನೀಡುವವನಾಗಿದ್ದಾನೆ.”

---

قَالُواْ يَٰصَٰلِحُ قَدۡ كُنتَ فِينَا مَرۡجُوّٗا قَبۡلَ هَٰذَآۖ أَتَنۡهَىٰنَآ أَن نَّعۡبُدَ مَا يَعۡبُدُ ءَابَآؤُنَا وَإِنَّنَا لَفِي شَكّٖ مِّمَّا تَدۡعُونَآ إِلَيۡهِ مُرِيبٖ ٦٢

62. ಅವರು ಹೇಳಿದರು: “ಓ ಸ್ವಾಲಿಹ್! ಇದಕ್ಕೆ ಮುಂಚೆ ನಾವು ನಿನ್ನಲ್ಲಿ ಬಹಳಷ್ಟು ನಿರೀಕ್ಷೆಗಳನ್ನಿಟ್ಟಿದ್ದೆವು. ನಮ್ಮ ಪೂರ್ವಜರು ಆರಾಧಿಸಿದ್ದನ್ನು ಆರಾಧಿಸಬಾರದೆಂದು ನೀನು ನಮಗೆ ಹೇಳುತ್ತಿರುವೆಯಾ? ನೀನು ನಮ್ಮನ್ನು ಯಾವ ಧರ್ಮದ ಕಡೆಗೆ ಕರೆಯುತ್ತಿರುವೆಯೋ ಅದರ ಬಗ್ಗೆ ನಮಗೆ ಗೊಂದಲಪೂರ್ಣ ಸಂಶಯಗಳಿವೆ.”

---

قَالَ يَٰقَوۡمِ أَرَءَيۡتُمۡ إِن كُنتُ عَلَىٰ بَيِّنَةٖ مِّن رَّبِّي وَءَاتَىٰنِي مِنۡهُ رَحۡمَةٗ فَمَن يَنصُرُنِي مِنَ ٱللَّهِ إِنۡ عَصَيۡتُهُۥۖ فَمَا تَزِيدُونَنِي غَيۡرَ تَخۡسِيرٖ ٦٣

63. ಸ್ವಾಲಿಹ್ ಹೇಳಿದರು: “ಓ ನನ್ನ ಜನರೇ! ನೀವು ಆಲೋಚಿಸಿ ನೋಡಿದ್ದೀರಾ? ನಾನು ನನ್ನ ಪರಿಪಾಲಕನ (ಅಲ್ಲಾಹನ) ಕಡೆಯ ಒಂದು ಸ್ಪಷ್ಟ ಆಧಾರದ ಮೇಲೆ ನಿಂತಿರುವಾಗ ಮತ್ತು ಅವನು ತನ್ನ ದಯೆಯನ್ನು ನನಗೆ ದಯಪಾಲಿಸಿರುವಾಗ, ನಾನು ಅವನು ಹೇಳಿದಂತೆ ಕೇಳದಿದ್ದರೆ ಅವನಿಂದ ನನ್ನನ್ನು ರಕ್ಷಿಸುವವರು

ಯಾರು? ನೀವು ನನಗೆ ನಷ್ಟವನ್ನೇ ಹೆಚ್ಚಿಸುತ್ತಿದ್ದೀರಿ.

---

64. ಓ ನನ್ನ ಜನರೇ! ಇದು ಅಲ್ಲಾಹನ ಒಂಟೆ. ಇದು ನಿಮಗೊಂದು ದೃಷ್ಟಾಂತವಾಗಿದೆ. ಆದ್ದರಿಂದ ಅದನ್ನು ಅಲ್ಲಾಹನ ಭೂಮಿಯಲ್ಲಿ ಮೇಯಲು ಬಿಟ್ಟುಬಿಡಿ. ಅದಕ್ಕೆ ಯಾವುದೇ ತೊಂದರೆ ಕೊಡಲು ಹೋಗಬೇಡಿ. ಕೊಟ್ಟರೆ ಸಮೀಪದಲ್ಲೇ ಇರುವ ಶಿಕ್ಷೆಯು ನಿಮ್ಮ ಮೇಲೆರಗುವುದು."

وَيَٰقَوۡمِ هَٰذِهِۦ نَاقَةُ ٱللَّهِ لَكُمۡ ءَايَةٗۖ فَذَرُوهَا
تَأۡكُلۡ فِيٓ أَرۡضِ ٱللَّهِۖ وَلَا تَمَسُّوهَا بِسُوٓءٖ
فَيَأۡخُذَكُمۡ عَذَابٞ قَرِيبٞ ٦٤

---

65. ಆದರೆ ಅವರು ಅದರ ಕಾಲುಗಳನ್ನು ಕಡಿದರು. ಆಗ ಸ್ವಾಲಿಹ್ ಹೇಳಿದರು: "ಮೂರು ದಿನಗಳವರೆಗೆ ನಿಮ್ಮ ಮನೆಗಳಲ್ಲಿ ಆನಂದವಾಗಿರಿ. ಇದು ಹುಸಿ ವಾಗ್ದಾನವಲ್ಲ."

فَعَقَرُوهَا فَقَالَ تَمَتَّعُواْ فِي دَارِكُمۡ ثَلَٰثَةَ أَيَّامٖۖ
ذَٰلِكَ وَعۡدٌ غَيۡرُ مَكۡذُوبٖ ٦٥

---

66. ನಂತರ ನಮ್ಮ ಆಜ್ಞೆಯು ಬಂದಾಗ, ನಾವು ನಮ್ಮ ದಯೆಯಿಂದ ಸ್ವಾಲಿಹ್ ಮತ್ತು ಅವರ ಜೊತೆಯಲ್ಲಿದ್ದ ಸತ್ಯವಿಶ್ವಾಸಿಗಳನ್ನು ರಕ್ಷಿಸಿದೆವು. ಆ ದಿನದ ಅವಮಾನದಿಂದಲೂ ಅವರನ್ನು ರಕ್ಷಿಸಿದೆವು. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಶಕ್ತಿಶಾಲಿ ಮತ್ತು ಪ್ರಬಲನಾಗಿದ್ದಾನೆ.

فَلَمَّا جَآءَ أَمۡرُنَا نَجَّيۡنَا صَٰلِحٗا وَٱلَّذِينَ ءَامَنُواْ
مَعَهُۥ بِرَحۡمَةٖ مِّنَّا وَمِنۡ خِزۡيِ يَوۡمِئِذٍۚ إِنَّ رَبَّكَ
هُوَ ٱلۡقَوِيُّ ٱلۡعَزِيزُ ٦٦

---

67. ಆ ಅಕ್ರಮಿಗಳನ್ನು ಮಹಾ ಚೀತ್ಕಾರವು ಹಿಡಿದುಬಿಟ್ಟಿತು. ಅವರು ತಮ್ಮ ಮನೆಗಳಲ್ಲಿಯೇ ಬೋರಲು ಬಿದ್ದು ಸತ್ತರು.

وَأَخَذَ ٱلَّذِينَ ظَلَمُواْ ٱلصَّيۡحَةُ فَأَصۡبَحُواْ فِي
دِيَٰرِهِمۡ جَٰثِمِينَ ٦٧

---

68. ಅವರು ಅಲ್ಲಿ ವಾಸಿಸಲೇ ಇಲ್ಲ ಎಂಬಂತೆ ನಾಶವಾದರು. ತಿಳಿಯಿರಿ! ನಿಶ್ಚಯವಾಗಿಯೂ ಸಮೂದ್ ಗೋತ್ರದವರು ಅವರ ಪರಿಪಾಲಕನ್ನು (ಅಲ್ಲಾಹನನ್ನು) ನಿಷೇಧಿಸಿದರು. ತಿಳಿಯಿರಿ! ಸಮೂದ್ ಗೋತ್ರದವರು (ಅಲ್ಲಾಹನ ದಯೆಯಿಂದ) ದೂರವಾದರು.

كَأَن لَّمۡ يَغۡنَوۡاْ فِيهَآۗ أَلَآ إِنَّ ثَمُودَاْ كَفَرُواْ
رَبَّهُمۡۗ أَلَا بُعۡدٗا لِّثَمُودَ ٦٨

---

69. ನಮ್ಮ ದೂತರು ಇಬ್ರಾಹೀಮರ ಬಳಿಗೆ ಸುವಾರ್ತೆಯೊಂದಿಗೆ ಬಂದರು. ಅವರು (ದೂತರು) ಸಲಾಂ ಹೇಳಿದರು. ಇಬ್ರಾಹೀಮ್ ಸಲಾಂಗೆ ಉತ್ತರಿಸಿದರು. ನಂತರ ತಡಮಾಡದೆ ಒಂದು ಕರುವನ್ನು ಹುರಿದು ತಂದರು.

وَلَقَدۡ جَآءَتۡ رُسُلُنَآ إِبۡرَٰهِيمَ بِٱلۡبُشۡرَىٰ قَالُواْ
سَلَٰمٗاۖ قَالَ سَلَٰمٞۖ فَمَا لَبِثَ أَن جَآءَ بِعِجۡلٍ
حَنِيذٖ ٦٩

---

70. ಆದರೆ ಅವರು (ದೂತರು) ತಮ್ಮ ಕೈಗಳನ್ನು ಅದರ ಕಡೆಗೆ ಚಾಚದಿರುವುದನ್ನು ಕಂಡಾಗ ಇಬ್ರಾಹೀಮರಿಗೆ ಅವರು ಅಪರಿಚಿತರಂತೆ ಭಾಸವಾಯಿತು ಮತ್ತು ಅವರ ಬಗ್ಗೆ ಗಾಬರಿಯಾಯಿತು.[1] ಅವರು (ದೂತರು) ಹೇಳಿದರು:

فَلَمَّا رَءَآ أَيۡدِيَهُمۡ لَا تَصِلُ إِلَيۡهِ نَكِرَهُمۡ
وَأَوۡجَسَ مِنۡهُمۡ خِيفَةٗۚ قَالُواْ لَا تَخَفۡ إِنَّآ أُرۡسِلۡنَآ
إِلَىٰ قَوۡمِ لُوطٖ ٧٠

---

[1] ದೇವದೂತರುಗಳು ಮನುಷ್ಯ ರೂಪದಲ್ಲಿ ಇಬ್ರಾಹೀಮರ (ಅವರ ಮೇಲೆ ಶಾಂತಿಯಿರಲಿ) ಬಳಿಗೆ ಬಂದಿದ್ದರು. ಇಬ್ರಾಹೀಂ (ಅವರ ಮೇಲೆ ಶಾಂತಿಯಿರಲಿ) ಅವರನ್ನು ಸತ್ಕರಿಸಿದರು. ಆದರೆ ಅವರು ಆಹಾರ ಸೇವಿಸದಿರುವುದನ್ನು ಕಂಡಾಗ ಇಬ್ರಾಹೀಮರಿಗೆ (ಅವರ ಮೇಲೆ

“ಹೆದರಬೇಡಿ. ನಮ್ಮನ್ನು ಲೂತರ ಜನರ ಬಳಿಗೆ ಕಳುಹಿಸಲಾಗಿದೆ.”

---

71. ಅವರ ಹೆಂಡತಿ ಅಲ್ಲಿ ನಿಂತಿದ್ದರು. ಅವರು ಮುಗುಳ್ನಕ್ಕರು. ಆಗ ನಾವು ಅವರಿಗೆ ಇಸ್‌ಹಾಕರ (ಜನನದ) ಬಗ್ಗೆ ಮತ್ತು ಇಸ್‌ಹಾಕರ ಹಿಂದೆ ಯಾಕೂಬರ (ಜನನದ) ಬಗ್ಗೆ ಸುವಾರ್ತೆ ನೀಡಿದೆವು.[1]

وَٱمۡرَأَتُهُۥ قَآئِمَةٞ فَضَحِكَتۡ فَبَشَّرۡنَٰهَا بِإِسۡحَٰقَ وَمِن وَرَآءِ إِسۡحَٰقَ يَعۡقُوبَ ٧١

---

72. ಅವರು (ಹೆಂಡತಿ) ಹೇಳಿದರು: “ಓ ನನ್ನ ದುರದೃಷ್ಟವೇ! ನಾನು ಮಗುವಿಗೆ ಜನ್ಮ ನೀಡುವುದು ಸಾಧ್ಯವೇ? ನಾನೊಬ್ಬ ವೃದ್ಧೆ. ಈ ನನ್ನ ಗಂಡ ಕೂಡ ಒಬ್ಬ ಮುದುಕ! ನಿಶ್ಚಯವಾಗಿಯೂ ಇದೊಂದು ವಿಚಿತ್ರ ಸಂಗತಿಯಾಗಿದೆ!”

قَالَتۡ يَٰوَيۡلَتَىٰٓ ءَأَلِدُ وَأَنَا۠ عَجُوزٞ وَهَٰذَا بَعۡلِي شَيۡخًاۖ إِنَّ هَٰذَا لَشَيۡءٌ عَجِيبٞ ٧٢

---

73. ಅವರು (ದೂತರು) ಹೇಳಿದರು: “ಅಲ್ಲಾಹನ ಆಜ್ಞೆಯ ಬಗ್ಗೆ ನಿಮಗೆ ಅಚ್ಚರಿಯೇ? ಓ ಮನೆಯವರೇ! ನಿಮ್ಮ ಮೇಲೆ ಅಲ್ಲಾಹನ ದಯೆ ಮತ್ತು ಸಮೃದ್ಧಿಯಿರಲಿ. ನಿಶ್ಚಯವಾಗಿಯೂ ಅವನು ಸ್ತುತ್ಯರ್ಹನು ಮತ್ತು ಮಹಾಮಹಿಮನಾಗಿದ್ದಾನೆ.”

قَالُوٓاْ أَتَعۡجَبِينَ مِنۡ أَمۡرِ ٱللَّهِۖ رَحۡمَتُ ٱللَّهِ وَبَرَكَٰتُهُۥ عَلَيۡكُمۡ أَهۡلَ ٱلۡبَيۡتِۚ إِنَّهُۥ حَمِيدٞ مَّجِيدٞ ٧٣

---

74. ಇಬ್ರಾಹೀಮರಿಂದ ಭಯವು ನಿವಾರಣೆಯಾದಾಗ ಮತ್ತು ಅವರಿಗೆ ಸುವಾರ್ತೆಯು ತಲುಪಿದಾಗ, ಅವರು ನಮ್ಮೊಡನೆ (ದೂತರೊಡನೆ) ಲೂತರ ಜನರ ಬಗ್ಗೆ ತರ್ಕಿಸಲು ಪ್ರಾರಂಭಿಸಿದರು.

فَلَمَّا ذَهَبَ عَنۡ إِبۡرَٰهِيمَ ٱلرَّوۡعُ وَجَآءَتۡهُ ٱلۡبُشۡرَىٰ يُجَٰدِلُنَا فِي قَوۡمِ لُوطٍ ٧٤

---

75. ನಿಶ್ಚಯವಾಗಿಯೂ ಇಬ್ರಾಹೀಮರು ಸೈರಣೆಯುಳ್ಳವರು, ಅನುಕಂಪವುಳ್ಳವರು ಮತ್ತು (ಅಲ್ಲಾಹನ ಕಡೆಗೆ) ಪಶ್ಚಾತ್ತಾಪದಿಂದ ತಿರುಗುವವರಾಗಿದ್ದಾರೆ.

إِنَّ إِبۡرَٰهِيمَ لَحَلِيمٌ أَوَّٰهٞ مُّنِيبٞ ٧٥

---

76. (ದೂತರು ಹೇಳಿದರು): “ಓ ಇಬ್ರಾಹೀಮರೇ! ಈ ತರ್ಕವನ್ನು ಬಿಟ್ಟುಬಿಡಿ. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನ (ಅಲ್ಲಾಹನ) ಆಜ್ಞೆಯು ಬಂದಿದೆ. ನಿಶ್ಚಯವಾಗಿಯೂ ಅವರಿಗೆ ರದ್ದು ಮಾಡಲಾಗದ ಶಿಕ್ಷೆಯು ಬರಲಿದೆ.”

يَٰٓإِبۡرَٰهِيمُ أَعۡرِضۡ عَنۡ هَٰذَآۖ إِنَّهُۥ قَدۡ جَآءَ أَمۡرُ رَبِّكَۖ وَإِنَّهُمۡ ءَاتِيهِمۡ عَذَابٌ غَيۡرُ مَرۡدُودٖ ٧٦

---

77. ನಮ್ಮ ದೂತರು ಲೂತರ ಬಳಿಗೆ ಬಂದಾಗ, ಅವರಿಗೆ ಅವರ (ದೂತರ) ಬಗ್ಗೆ ಕಳವಳವಾಯಿತು. ಅವರ ಹೃದಯದಲ್ಲಿ ಇಕ್ಕಟ್ಟು ಅನುಭವವಾಯಿತು. ಅವರು ಹೇಳಿದರು: “ಇದೊಂದು ಕಠಿಣ

وَلَمَّا جَآءَتۡ رُسُلُنَا لُوطٗا سِيٓءَ بِهِمۡ وَضَاقَ بِهِمۡ ذَرۡعٗا وَقَالَ هَٰذَا يَوۡمٌ عَصِيبٞ ٧٧

---

ಶಾಂತಿಯಿರಲಿ) ಅವರು ಮನುಷ್ಯರಲ್ಲವೆಂದು ಸ್ಪಷ್ಟವಾಗಿ ಗಾಬರಿಯಾಯಿತು.

[1] ಇಬ್ರಾಹೀಮರಿಗೆ (ಅವರ ಮೇಲೆ ಶಾಂತಿಯಿರಲಿ) ಇಬ್ಬರು ಮಕ್ಕಳು—ಇಸ್ಮಾಯೀಲ್ ಮತ್ತು ಇಸ್‌ಹಾಕ್. ಯಾಕೂಬ್ ಇಸ್‌ಹಾಕರ ಮಗ. ಇಸ್‌ಹಾಕರ ಹಿಂದೆ ಎಂದರೆ ಅವರ ವಂಶದಲ್ಲಿ ಎಂದರ್ಥ. (ಅವರೆಲ್ಲರ ಮೇಲೆ ಶಾಂತಿಯಿರಲಿ)

ಪರೀಕ್ಷೆಯ ದಿನವಾಗಿದೆ."[1]

78. ಅವರ ಜನರು ಅವರ ಬಳಿಗೆ ಓಡೋಡಿ ಬಂದರು. ಅವರು ಬಹಳ ಹಿಂದಿನಿಂದಲೇ ಕೆಟ್ಟ ಕೃತ್ಯಗಳನ್ನು ಮಾಡುತ್ತಾ ಬಂದಿದ್ದರು. ಲೂತ್ ಹೇಳಿದರು: "ಓ ನನ್ನ ಜನರೇ! ಇಗೋ ಇವರು ನನ್ನ ಹೆಣ್ಣುಮಕ್ಕಳು. ಇವರು ನಿಮಗೆ ಹೆಚ್ಚು ಪರಿಶುದ್ಧರು. ಅಲ್ಲಾಹನನ್ನು ಭಯಪಡಿರಿ. ನನ್ನ ಅತಿಥಿಗಳ ವಿಷಯದಲ್ಲಿ ನನ್ನನ್ನು ಅವಮಾನ ಮಾಡಬೇಡಿ. ನಿಮ್ಮಲ್ಲಿ ಕನಿಷ್ಠ ಒಬ್ಬ ನೀತಿವಂತ ವ್ಯಕ್ತಿಯೂ ಇಲ್ಲವೇ?"

وَجَآءَهُۥ قَوۡمُهُۥ يُهۡرَعُونَ إِلَيۡهِ وَمِن قَبۡلُ كَانُواْ يَعۡمَلُونَ ٱلسَّيِّـَٔاتِۚ قَالَ يَٰقَوۡمِ هَٰٓؤُلَآءِ بَنَاتِي هُنَّ أَطۡهَرُ لَكُمۡۖ فَٱتَّقُواْ ٱللَّهَ وَلَا تُخۡزُونِ فِي ضَيۡفِيٓۖ أَلَيۡسَ مِنكُمۡ رَجُلٞ رَّشِيدٞ ٧٨

79. ಅವರು ಹೇಳಿದರು: "ನಮಗೆ ನಿನ್ನ ಹೆಣ್ಣುಮಕ್ಕಳ ವಿಷಯದಲ್ಲಿ ಯಾವುದೇ ಹಕ್ಕಿಲ್ಲ (ಬಯಕೆಯಿಲ್ಲ) ಎಂದು ನಿನಗೆ ಚೆನ್ನಾಗಿ ಗೊತ್ತಿದೆ. ನಮ್ಮ ಇರಾದೆಯೇನೆಂದೂ ನಿನಗೆ ಗೊತ್ತಿದೆ."

قَالُواْ لَقَدۡ عَلِمۡتَ مَا لَنَا فِي بَنَاتِكَ مِنۡ حَقّٖ وَإِنَّكَ لَتَعۡلَمُ مَا نُرِيدُ ٧٩

80. ಲೂತ್ ಹೇಳಿದರು: "ಅಯ್ಯೋ! ನಿಮ್ಮನ್ನು ಎದುರಿಸುವ ಶಕ್ತಿ ನನಗಿರುತ್ತಿದ್ದರೆ! ಅಥವಾ ಒಬ್ಬ ಬಲಿಷ್ಠ ಸಹಾಯಕನ ಆಶ್ರಯ ಪಡೆಯಲು ನನಗೆ ಸಾಧ್ಯವಾಗುತ್ತಿದ್ದರೆ!"

قَالَ لَوۡ أَنَّ لِي بِكُمۡ قُوَّةً أَوۡ ءَاوِيٓ إِلَىٰ رُكۡنٖ شَدِيدٖ ٨٠

81. ಅವರು (ದೂತರು) ಹೇಳಿದರು: "ಓ ಲೂತ್! ನಿಶ್ಚಯವಾಗಿಯೂ ನಾವು ನಿಮ್ಮ ಪರಿಪಾಲಕನ (ಅಲ್ಲಾಹನ) ದೂತರಾಗಿದ್ದೇವೆ. ನಿಮ್ಮ ಬಳಿಗೆ ತಲುಪಲು ಅವರಿಗೆ ಸಾಧ್ಯವಿಲ್ಲ. ಆದ್ದರಿಂದ ರಾತ್ರಿಯ ಒಂದು ಭಾಗದಲ್ಲಿ ನೀವು ನಿಮ್ಮ ಕುಟುಂಬ ಸಮೇತ ಇಲ್ಲಿಂದ ಹೊರಟುಹೋಗಿ. ನಿಮ್ಮಲ್ಲಿ ಯಾರೂ ಹಿಂದಿರುಗಿ ನೋಡದಿರಲಿ. ಆದರೆ ನಿಮ್ಮ ಪತ್ನಿಯನ್ನು ಕರೆದೊಯ್ಯಬೇಡಿ. ನಿಶ್ಚಯವಾಗಿಯೂ ಅವರಿಗೇನು ಸಂಭವಿಸುತ್ತದೋ ಅದು ಅವಳಿಗೂ ಸಂಭವಿಸುತ್ತದೆ. ನಿಶ್ಚಯವಾಗಿಯೂ ಅವರಿಗೆ ನೀಡಲಾದ ನಿಗದಿತ ಸಮಯವು ಪ್ರಭಾತವಾಗಿದೆ. ಪ್ರಭಾತವು ಹತ್ತಿರದಲ್ಲೇ ಇದೆಯಲ್ಲವೇ?"

قَالُواْ يَٰلُوطُ إِنَّا رُسُلُ رَبِّكَ لَن يَصِلُوٓاْ إِلَيۡكَۖ فَأَسۡرِ بِأَهۡلِكَ بِقِطۡعٖ مِّنَ ٱلَّيۡلِ وَلَا يَلۡتَفِتۡ مِنكُمۡ أَحَدٌ إِلَّا ٱمۡرَأَتَكَۖ إِنَّهُۥ مُصِيبُهَا مَآ أَصَابَهُمۡۚ إِنَّ مَوۡعِدَهُمُ ٱلصُّبۡحُۚ أَلَيۡسَ ٱلصُّبۡحُ بِقَرِيبٖ ٨١

82. ನಂತರ ನಮ್ಮ ಆಜ್ಞೆಯು ಬಂದಾಗ, ನಾವು ಆ ಊರನ್ನು ಬುಡಮೇಲು ಮಾಡಿದೆವು ಮತ್ತು ಅವರ ಮೇಲೆ ಪದರ ಪದರವಾಗಿರುವ ಕಲ್ಲುಗಳ ಮಳೆಯನ್ನು ಸುರಿಸಿದೆವು.

فَلَمَّا جَآءَ أَمۡرُنَا جَعَلۡنَا عَٰلِيَهَا سَافِلَهَا وَأَمۡطَرۡنَا عَلَيۡهَا حِجَارَةٗ مِّن سِجِّيلٖ مَّنضُودٖ ٨٢

83. ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯಿಂದ ಗುರುತು

مُّسَوَّمَةً عِندَ رَبِّكَۖ وَمَا هِيَ مِنَ ٱلظَّٰلِمِينَ

[1] ಲೂತರ (ಅವರ ಮೇಲೆ ಶಾಂತಿಯಿರಲಿ) ಜನರು ಸಲಿಂಗಕಾಮಿಗಳಾಗಿದ್ದರು. ದೇವದೂತರುಗಳು ಸ್ಫುರದ್ರೂಪಿ ಯುವಕರ ರೂಪದಲ್ಲಿ ಅಲ್ಲಿಗೆ ಬಂದಿದ್ದರು. ಇವರನ್ನು ಕಂಡಾಗ ಲೂತರಿಗೆ (ಅವರ ಮೇಲೆ ಶಾಂತಿಯಿರಲಿ) ಕಳವಳವಾಯಿತು. ಎಲ್ಲಿ ತನ್ನ ಜನರು ಇವರನ್ನು ದುರುಪಯೋ- ಗಪಡಿಸುತ್ತಾರೋ ಎಂದು ಅವರಿಗೆ ಗಾಬರಿಯಾಯಿತು. ಅವರ ಹೃದಯ ಬಡಿತ ಹೆಚ್ಚಾಯಿತು.

بِبَعِيدٖ ٨٣

ಹಾಕಲಾದ ಕಲ್ಲುಗಳು. ಅದು ಈ ಅಕ್ರಮಿಗಳಿಂದ (ಮಕ್ಕಾದ ಸತ್ಯ-ನಿಷೇಧಿಗಳಿಂದ) ಸ್ವಲ್ಪವೂ ದೂರವಿಲ್ಲ.[1]

---

وَإِلَىٰ مَدۡيَنَ أَخَاهُمۡ شُعَيۡبٗاۚ قَالَ يَٰقَوۡمِ ٱعۡبُدُواْ ٱللَّهَ مَا لَكُم مِّنۡ إِلَٰهٍ غَيۡرُهُۥۖ وَلَا تَنقُصُواْ ٱلۡمِكۡيَالَ وَٱلۡمِيزَانَۖ إِنِّيٓ أَرَىٰكُم بِخَيۡرٖ وَإِنِّيٓ أَخَافُ عَلَيۡكُمۡ عَذَابَ يَوۡمٖ مُّحِيطٖ ٨٤

84. ನಾವು ಮದ್ಯನ್ ಗೋತ್ರದವರ ಬಳಿಗೆ ಅವರ ಸಹೋದರ ಶುಐಬರನ್ನು ಕಳುಹಿಸಿದೆವು. ಅವರು ಹೇಳಿದರು: "ಓ ನನ್ನ ಜನರೇ! ನೀವು ಅಲ್ಲಾಹನನ್ನು ಆರಾಧಿಸಿರಿ. ಅವನ ಹೊರತು ನಿಮಗೆ ಆರಾಧಿಸಲು ಅರ್ಹರಾದ ಬೇರೆ ದೇವರಿಲ್ಲ. ಅಳತೆ ಮತ್ತು ತೂಕ ಮಾಡುವಾಗ ಕಡಿಮೆ ಮಾಡಬೇಡಿ. ನಿಶ್ಚಯವಾಗಿಯೂ ನೀವು ಸಮೃದ್ಧ ಸ್ಥಿತಿಯಲ್ಲಿರುವುದನ್ನು ನಾನು ಕಾಣುತ್ತಿದ್ದೇನೆ. ಆದರೆ ಸಂಪೂರ್ಣವಾಗಿ ಆವರಿಸಿಕೊಳ್ಳುವ ಆ ದಿನದ ಶಿಕ್ಷೆಯು ನಿಮ್ಮ ಮೇಲೆರಗಬಹುದೆಂದು ನಿಶ್ಚಯವಾಗಿಯೂ ನನಗೆ ಭಯವಾಗುತ್ತಿದೆ.

---

وَيَٰقَوۡمِ أَوۡفُواْ ٱلۡمِكۡيَالَ وَٱلۡمِيزَانَ بِٱلۡقِسۡطِۖ وَلَا تَبۡخَسُواْ ٱلنَّاسَ أَشۡيَآءَهُمۡ وَلَا تَعۡثَوۡاْ فِي ٱلۡأَرۡضِ مُفۡسِدِينَ ٨٥

85. ಓ ನನ್ನ ಜನರೇ! ಅಳತೆ ಮತ್ತು ತೂಕವನ್ನು ನ್ಯಾಯವಾದ ರೀತಿಯಲ್ಲಿ ಪೂರ್ಣಗೊಳಿಸಿರಿ. ಜನರಿಗೆ ಅವರ ವಸ್ತುಗಳನ್ನು ಕಡಿಮೆ ಮಾಡಬೇಡಿ. ಕಿಡಿಗೇಡಿತನ ಮಾಡುತ್ತಾ ಭೂಮಿಯಲ್ಲಿ ಅಲೆಯಬೇಡಿ.

---

بَقِيَّتُ ٱللَّهِ خَيۡرٞ لَّكُمۡ إِن كُنتُم مُّؤۡمِنِينَۚ وَمَآ أَنَا۠ عَلَيۡكُم بِحَفِيظٖ ٨٦

86. ನೀವು ಸತ್ಯವಿಶ್ವಾಸಿಗಳಾಗಿದ್ದರೆ ಅಲ್ಲಾಹು ನಿಮಗೆ ಉಳಿಸಿಕೊಡುವ ಧರ್ಮಸಮ್ಮತವಾದ ಲಾಭವು ನಿಮಗೆ ಅತ್ಯುತ್ತಮವಾಗಿದೆ. ನಾನೇನೂ ನಿಮ್ಮ ಕಾವಲುಗಾರನಲ್ಲ."

---

قَالُواْ يَٰشُعَيۡبُ أَصَلَوٰتُكَ تَأۡمُرُكَ أَن نَّتۡرُكَ مَا يَعۡبُدُ ءَابَآؤُنَآ أَوۡ أَن نَّفۡعَلَ فِيٓ أَمۡوَٰلِنَا مَا نَشَٰٓؤُاْۖ إِنَّكَ لَأَنتَ ٱلۡحَلِيمُ ٱلرَّشِيدُ ٨٧

87. ಅವರು ಹೇಳಿದರು: "ಓ ಶುಐಬ್! ನಾವು ನಮ್ಮ ಪೂರ್ವಿಕರು ಆರಾಧಿಸುತ್ತಾ ಬಂದಿರುವುದನ್ನು ತೊರೆಯಬೇಕೆಂದು ಅಥವಾ ನಮ್ಮ ಧನದಲ್ಲಿ ನಮಗಿಷ್ಟ ಬಂದಂತೆ ವ್ಯವಹರಿಸುವುದನ್ನು ಬಿಟ್ಟುಬಿಡಬೇಕೆಂದು ಹೇಳಲು ನಿನ್ನ ನಮಾಝ್ ನಿನಗೆ ಆದೇಶಿಸುತ್ತಿದೆಯೇ? ನೀನೊಬ್ಬ ದೊಡ್ಡ ಸೈರಣೆಯುಳ್ಳವನು ಮತ್ತು ನೀತಿವಂತನೇ ಸರಿ!"

---

قَالَ يَٰقَوۡمِ أَرَءَيۡتُمۡ إِن كُنتُ عَلَىٰ بَيِّنَةٖ مِّن رَّبِّي وَرَزَقَنِي مِنۡهُ رِزۡقًا حَسَنٗاۚ وَمَآ أُرِيدُ أَنۡ أُخَالِفَكُمۡ إِلَىٰ مَآ أَنۡهَىٰكُمۡ عَنۡهُۚ إِنۡ أُرِيدُ إِلَّا ٱلۡإِصۡلَٰحَ مَا ٱسۡتَطَعۡتُۚ وَمَا تَوۡفِيقِيٓ إِلَّا بِٱللَّهِۚ عَلَيۡهِ تَوَكَّلۡتُ وَإِلَيۡهِ أُنِيبُ ٨٨

88. ಶುಐಬ್ ಹೇಳಿದರು: "ಓ ನನ್ನ ಜನರೇ! ನೀವು ಆಲೋಚಿಸಿ ನೋಡಿದ್ದೀರಾ? ನಾನು ನನ್ನ ಪರಿಪಾಲಕನ (ಅಲ್ಲಾಹನ) ಕಡೆಯ ಸ್ಪಷ್ಟ ಆಧಾರದ ಮೇಲೆ ನಿಂತಿರುವಾಗ ಮತ್ತು ಅವನು ನನಗೆ ಉತ್ತಮ ಜೀವನೋಪಾಯವನ್ನು ಒದಗಿಸಿರುವಾಗ (ಸತ್ಯವನ್ನು ಹೇಳದಿರಲು ನನ್ನಿಂದ ಹೇಗೆ ಸಾಧ್ಯ?) ನಾನು ನಿಮಗೆ ಏನನ್ನು ವಿರೋಧಿಸುತ್ತೇನೋ ಅದಕ್ಕೆ ವಿರುದ್ಧವಾಗಿ ಸಾಗಲು ನಾನು ಬಯಸುವುದಿಲ್ಲ. ನಾನು ನನಗೆ ಸಾಧ್ಯವಾದಷ್ಟು ಸುಧಾರಣೆ

---

[1] ಅಂದರೆ ಆ ಅಕ್ರಮಿಗಳನ್ನು ಶಿಕ್ಷಿಸಲಾದ ರೀತಿಯಲ್ಲೇ ನಿಮ್ಮನ್ನು ಕೂಡ ಶಿಕ್ಷಿಸಲಾಗದೆಂದು ನೀವು ನಿರ್ಭಯರಾಗಿರಬೇಕಾಗಿಲ್ಲ.

ಮಾಡಲು ಬಯಸುತ್ತೇನೆ. ಅಲ್ಲಾಹನ ಸಹಾಯದಿಂದ ಮಾತ್ರ
ನಾನು ಯಶಸ್ವಿಯಾಗಬಲ್ಲೆ. ಅವನಲ್ಲಿಯೇ ನಾನು ಭರವಸೆಯಿಟ್ಟಿ-
ದ್ದೇನೆ ಮತ್ತು ಅವರ ಬಳಿಗೇ ನಾನು ಮರಳುತ್ತೇನೆ.

---

89. ಓ ನನ್ನ ಜನರೇ! ನನ್ನೊಂದಿಗೆ ನೀವು ತೋರುತ್ತಿರುವ ಈ
ವಿರೋಧವು ನೂಹರ ಜನರಿಗೆ, ಹೂದರ ಜನರಿಗೆ ಅಥವಾ
ಸ್ವಾಲಿಹರ ಜನರಿಗೆ ಸಂಭವಿಸಿದ ದುರಂತವು ನಿಮಗೂ
ಸಂಭವಿಸುವಂತಾಗಲು ಪ್ರೇರಕವಾಗದಿರಲಿ. ಲೂತರ ಜನರಂತೂ
ನಿಮ್ಮಿಂದ ಹೆಚ್ಚು ದೂರದಲ್ಲಿಲ್ಲ.

وَيَٰقَوۡمِ لَا يَجۡرِمَنَّكُمۡ شِقَاقِيٓ أَن يُصِيبَكُم
مِّثۡلُ مَآ أَصَابَ قَوۡمَ نُوحٍ أَوۡ قَوۡمَ هُودٍ أَوۡ قَوۡمَ
صَٰلِحٖۚ وَمَا قَوۡمُ لُوطٖ مِّنكُم بِبَعِيدٖ ﴿٨٩﴾

---

90. ನಿಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ಕ್ಷಮೆಯಾಚಿಸಿರಿ. ನಂತರ
ಅವನ ಕಡೆಗೆ ಪಶ್ಚಾತ್ತಾಪದಿಂದ ತಿರುಗಿರಿ. ನಿಶ್ಚಯವಾಗಿಯೂ
ನನ್ನ ಪರಿಪಾಲಕನು (ಅಲ್ಲಾಹು) ದಯೆ ತೋರುವವನು ಮತ್ತು
ಅಕ್ಕರೆಯುಳ್ಳವನಾಗಿದ್ದಾನೆ."

وَٱسۡتَغۡفِرُواْ رَبَّكُمۡ ثُمَّ تُوبُوٓاْ إِلَيۡهِۚ إِنَّ رَبِّي
رَحِيمٞ وَدُودٞ ﴿٩٠﴾

---

91. ಅವರು ಹೇಳಿದರು: "ಓ ಶುಐಬ್! ನೀನು ಹೇಳುವ ಮಾತುಗಳಲ್ಲಿ
ಹೆಚ್ಚಿನದ್ದನ್ನು ಅರ್ಥಮಾಡಿಕೊಳ್ಳಲು ನಮಗೆ ಸಾಧ್ಯವಾಗುತ್ತಿಲ್ಲ.
ನಿಶ್ಚಯವಾಗಿಯೂ ನೀನು ನಮ್ಮಲ್ಲಿ ಒಬ್ಬ ಬಲಹೀನ ವ್ಯಕ್ತಿಯಂತೆ
ಕಾಣುತ್ತಿರುವೆ. ನಿನ್ನ ಗೋತ್ರದವರು ಇಲ್ಲದಿರುತ್ತಿದ್ದರೆ ನಾವು
ನಿನ್ನನ್ನು ಕಲ್ಲೆಸೆದು ಕೊಲ್ಲುತ್ತಿದ್ದೆವು. ನಾವು ನಿನ್ನನ್ನು ಗೌರವಾರ್ಹ
ವ್ಯಕ್ತಿಯೆಂದು ಪರಿಗಣಿಸುವುದಿಲ್ಲ."

قَالُواْ يَٰشُعَيۡبُ مَا نَفۡقَهُ كَثِيرٗا مِّمَّا تَقُولُ وَإِنَّا
لَنَرَىٰكَ فِينَا ضَعِيفٗاۖ وَلَوۡلَا رَهۡطُكَ لَرَجَمۡنَٰكَۖ
وَمَآ أَنتَ عَلَيۡنَا بِعَزِيزٖ ﴿٩١﴾

---

92. ಶುಐಬ್ ಹೇಳಿದರು: "ಓ ನನ್ನ ಜನರೇ! ನಿಮ್ಮ ದೃಷ್ಟಿಯಲ್ಲಿ
ಅಲ್ಲಾಹನಿಗಿಂತಲೂ ನನ್ನ ಗೋತ್ರದವರೇ ಹೆಚ್ಚು ಗೌರವಾನ್ವಿತರೇ?
ನೀವಂತೂ ಅವನನ್ನು ನಿಮ್ಮ ಬೆನ್ನ ಹಿಂಭಾಗಕ್ಕೆ ಎಸೆದಿದ್ದೀರಿ.
ನಿಶ್ಚಯವಾಗಿಯೂ ನನ್ನ ಪರಿಪಾಲಕನು (ಅಲ್ಲಾಹು) ನೀವು
ಮಾಡುವ ಕರ್ಮಗಳನ್ನು ಆವರಿಸಿದ್ದಾನೆ.

قَالَ يَٰقَوۡمِ أَرَهۡطِيٓ أَعَزُّ عَلَيۡكُم مِّنَ ٱللَّهِ
وَٱتَّخَذۡتُمُوهُ وَرَآءَكُمۡ ظِهۡرِيًّاۖ إِنَّ رَبِّي بِمَا
تَعۡمَلُونَ مُحِيطٞ ﴿٩٢﴾

---

93. ಓ ನನ್ನ ಜನರೇ! ನೀವು ನಿಮ್ಮ ಸ್ಥಾನದಲ್ಲಿ ಕರ್ಮವೆಸಗಿರಿ.
ನಾನೂ ಕರ್ಮವೆಸಗುತ್ತೇನೆ. ಅವಮಾನಗೊಳಿಸುವ ಶಿಕ್ಷೆಯು
ಯಾರಿಗೆ ಬರಲಿದೆ ಮತ್ತು ಯಾರು ಸುಳ್ಳು ಹೇಳುವವರು ಎಂದು
ಸದ್ಯವೇ ನೀವು ತಿಳಿಯುವಿರಿ. ನೀವು ಕಾಯಿರಿ. ನಾನೂ ಕೂಡ
ನಿಮ್ಮೊಂದಿಗೆ ಕಾಯುತ್ತೇನೆ."

وَيَٰقَوۡمِ ٱعۡمَلُواْ عَلَىٰ مَكَانَتِكُمۡ إِنِّي عَٰمِلٞۖ
سَوۡفَ تَعۡلَمُونَ مَن يَأۡتِيهِ عَذَابٞ يُخۡزِيهِ وَمَنۡ
هُوَ كَٰذِبٞۖ وَٱرۡتَقِبُوٓاْ إِنِّي مَعَكُمۡ رَقِيبٞ ﴿٩٣﴾

---

94. ನಮ್ಮ ಆಜ್ಞೆಯು ಬಂದಾಗ, ನಾವು ನಮ್ಮ ದಯೆಯಿಂದ
ಶುಐಬರನ್ನು ಮತ್ತು ಅವರ ಜೊತೆಯಲ್ಲಿದ್ದ ಸತ್ಯವಿಶ್ವಾಸಿಗ-
ಳನ್ನು ರಕ್ಷಿಸಿದೆವು. ಆ ಅಕ್ರಮಿಗಳನ್ನು ಮಹಾ ಚೀತ್ಕಾರವು

وَلَمَّا جَآءَ أَمۡرُنَا نَجَّيۡنَا شُعَيۡبٗا وَٱلَّذِينَ ءَامَنُواْ
مَعَهُۥ بِرَحۡمَةٖ مِّنَّا وَأَخَذَتِ ٱلَّذِينَ ظَلَمُواْ

ಹಿಡಿದುಬಿಟ್ಟಿತು. ಅವರು ತಮ್ಮ ಮನೆಗಳಲ್ಲಿಯೇ ಬೋರಲು ಬಿದ್ದು ಸತ್ತರು.

ٱلصَّيۡحَةُ فَأَصۡبَحُواْ فِي دِيَٰرِهِمۡ جَٰثِمِينَ ٩٤

---

95. ಅವರು ಅಲ್ಲಿ ವಾಸಿಸಲೇ ಇಲ್ಲ ಎಂಬಂತೆ ನಾಶವಾದರು. ತಿಳಿಯಿರಿ! ನಿಶ್ಚಯವಾಗಿಯೂ ಸಮೂದ್ ಗೋತ್ರದವರು (ಅಲ್ಲಾಹನ ದಯೆಯಿಂದ) ದೂರವಾದಂತೆ ಮದ್ಯನ್ ಗೋತ್ರದವರೂ (ಅಲ್ಲಾಹನ ದಯೆಯಿಂದ) ದೂರವಾದರು.

كَأَن لَّمۡ يَغۡنَوۡاْ فِيهَآۗ أَلَا بُعۡدٗا لِّمَدۡيَنَ كَمَا بَعِدَتۡ ثَمُودُ ٩٥

---

96. ನಾವು ಮೂಸಾರನ್ನು ನಮ್ಮ ದೃಷ್ಟಾಂತಗಳು ಮತ್ತು ಸ್ಪಷ್ಟ ಸಾಕ್ಷ್ಯಾ-ಧಾರಗಳೊಂದಿಗೆ ಕಳುಹಿಸಿದೆವು.

وَلَقَدۡ أَرۡسَلۡنَا مُوسَىٰ بِـَٔايَٰتِنَا وَسُلۡطَٰنٖ مُّبِينٍ ٩٦

---

97. ಫರೋಹ ಮತ್ತು ಅವನ ಜನರ ಮುಖಂಡರ ಬಳಿಗೆ. ಆದರೆ ಅವರು ಫರೋಹನ ಆಜ್ಞೆಯನ್ನು ಹಿಂಬಾಲಿಸಿದರು. ಫರೋಹನ ಆಜ್ಞೆಯು ವಿವೇಚನಾಯುಕ್ತವಾಗಿರಲಿಲ್ಲ.

إِلَىٰ فِرۡعَوۡنَ وَمَلَإِيْهِۦ فَٱتَّبَعُوٓاْ أَمۡرَ فِرۡعَوۡنَۖ وَمَآ أَمۡرُ فِرۡعَوۡنَ بِرَشِيدٖ ٩٧

---

98. ಪುನರುತ್ಥಾನದ ದಿನದಂದು ಅವನು (ಫರೋಹ) ತನ್ನ ಜನರ ಮುಂಭಾಗದಲ್ಲಿ ನಿಂತು ಅವರನ್ನು ನರಕಕ್ಕೆ ಸಾಗಿಸುವನು. ಅವರನ್ನು ಸಾಗಿಸಲಾಗುವ ಆ ಸ್ಥಳವು ಬಹಳ ನಿಕೃಷ್ಟವಾಗಿದೆ.

يَقۡدُمُ قَوۡمَهُۥ يَوۡمَ ٱلۡقِيَٰمَةِ فَأَوۡرَدَهُمُ ٱلنَّارَۖ وَبِئۡسَ ٱلۡوِرۡدُ ٱلۡمَوۡرُودُ ٩٨

---

99. ಈ ಲೋಕದಲ್ಲೂ ಪುನರುತ್ಥಾನ ದಿನದಲ್ಲೂ ಶಾಪವು ಅವರನ್ನು ಹಿಂಬಾಲಿಸುವುದು. ಅವರಿಗೆ ನೀಡಲಾಗುವ ಆ ಕೊಡುಗೆ ಬಹಳ ನಿಕೃಷ್ಟವಾಗಿದೆ.

وَأُتۡبِعُواْ فِي هَٰذِهِۦ لَعۡنَةٗ وَيَوۡمَ ٱلۡقِيَٰمَةِۚ بِئۡسَ ٱلرِّفۡدُ ٱلۡمَرۡفُودُ ٩٩

---

100. (ಪ್ರವಾದಿಯವರೇ) ಇವೆಲ್ಲವೂ ಆ ಊರುಗಳ ಕೆಲವು ಸಮಾಚಾರಗಳಾಗಿವೆ. ನಾವು ಇದನ್ನು ನಿಮಗೆ ತಿಳಿಸಿಕೊಡುತ್ತಿ-ದ್ದೇವೆ. ಆ ಊರುಗಳಲ್ಲಿ ಕೆಲವು ಅಸ್ತಿತ್ವದಲ್ಲಿವೆ ಮತ್ತು ಕೆಲವನ್ನು (ಬೇರು ಸಹಿತ) ಕೀಳಲಾಗಿದೆ.

ذَٰلِكَ مِنۡ أَنۢبَآءِ ٱلۡقُرَىٰ نَقُصُّهُۥ عَلَيۡكَۖ مِنۡهَا قَآئِمٞ وَحَصِيدٞ ١٠٠

---

101. ನಾವು ಅವರಿಗೆ ಯಾವುದೇ ಅನ್ಯಾಯ ಮಾಡಲಿಲ್ಲ. ಆದರೆ ಅವರು ಅವರಿಗೇ ಅನ್ಯಾಯ ಮಾಡಿದರು. ನಿಮ್ಮ ಪರಿಪಾಲಕನ (ಅಲ್ಲಾಹನ) ಆಜ್ಞೆಯು ಬಂದಾಗ, ಅವರು ಅಲ್ಲಾಹನನ್ನು ಬಿಟ್ಟು ಕರೆದು ಪ್ರಾರ್ಥಿಸುತ್ತಿದ್ದ ಅವರ ದೇವರುಗಳಲ್ಲಿ ಯಾರೂ ಕೂಡ ಅವರಿಗೆ ಸ್ವಲ್ಪವೂ ಪ್ರಯೋಜನಕ್ಕೆ ಬರಲಿಲ್ಲ. ಅವರು (ಆ ದೇವರುಗಳು) ಅವರಿಗೆ ನಷ್ಟವನ್ನಲ್ಲದೆ ಇನ್ನೇನನ್ನೂ ಹೆಚ್ಚಿಸಿ ಕೊಡುತ್ತಿರಲಿಲ್ಲ.

وَمَا ظَلَمۡنَٰهُمۡ وَلَٰكِن ظَلَمُوٓاْ أَنفُسَهُمۡۖ فَمَآ أَغۡنَتۡ عَنۡهُمۡ ءَالِهَتُهُمُ ٱلَّتِي يَدۡعُونَ مِن دُونِ ٱللَّهِ مِن شَيۡءٖ لَّمَّا جَآءَ أَمۡرُ رَبِّكَۖ وَمَا زَادُوهُمۡ غَيۡرَ تَتۡبِيبٖ ١٠١

---

102. ಅಕ್ರಮವೆಸಗಿದ ಊರುಗಳನ್ನು ಹಿಡಿಯುವಾಗ ನಿಮ್ಮ ಪರಿಪಾಲಕನ (ಅಲ್ಲಾಹನ) ಹಿಡಿತವು ಹೀಗೆಯೇ ಇರುತ್ತದೆ. ನಿಶ್ಚಯವಾಗಿಯೂ ಅವನ ಹಿಡಿತವು ಯಾತನೆಯಿಂದ ಕೂಡಿದ

وَكَذَٰلِكَ أَخۡذُ رَبِّكَ إِذَآ أَخَذَ ٱلۡقُرَىٰ وَهِيَ ظَٰلِمَةٌۚ إِنَّ أَخۡذَهُۥٓ أَلِيمٞ شَدِيدٌ ١٠٢

ಬಲಿಷ್ಠ ಹಿಡಿತವಾಗಿದೆ.

103. ಪರಲೋಕದ ಶಿಕ್ಷೆಯನ್ನು ಭಯಪಡುವವರಿಗೆ ನಿಶ್ಚಯವಾಗಿಯೂ ಅದರಲ್ಲಿ ದೃಷ್ಟಾಂತವಿದೆ. ಅದು ಮನುಷ್ಯರೆಲ್ಲರನ್ನೂ ಒಟ್ಟುಗೂಡಿಸುವ ದಿನವಾಗಿದೆ. ಅದು ಎಲ್ಲರೂ ಉಪಸ್ಥಿತರಾ-ಗಿರುವ ದಿನವಾಗಿದೆ.

إِنَّ فِي ذَٰلِكَ لَءَايَةً لِّمَنْ خَافَ عَذَابَ ٱلْءَاخِرَةِ ۚ ذَٰلِكَ يَوْمٌ مَّجْمُوعٌ لَّهُ ٱلنَّاسُ وَذَٰلِكَ يَوْمٌ مَّشْهُودٌ ﴿١٠٣﴾

104. ಒಂದು ನಿಶ್ಚಿತ ಅವಧಿಯ ತನಕ (ಪುನರುತ್ಥಾನ ದಿನದ ತನಕ) ಮಾತ್ರ ನಾವು ಅದನ್ನು ಮುಂದೂಡುತ್ತೇವೆ.

وَمَا نُؤَخِّرُهُۥٓ إِلَّا لِأَجَلٍ مَّعْدُودٍ ﴿١٠٤﴾

105. ಆ ಅವಧಿಯು ಬರುವ ದಿನ ಅಲ್ಲಾಹನ ಅಪ್ಪಣೆಯಿಲ್ಲದೆ ಯಾರೂ ಮಾತನಾಡುವುದಿಲ್ಲ. ಅವರಲ್ಲಿ ನತದೃಷ್ಟರು ಮತ್ತು ಅದೃಷ್ಟವಂತರು ಇರುತ್ತಾರೆ.

يَوْمَ يَأْتِ لَا تَكَلَّمُ نَفْسٌ إِلَّا بِإِذْنِهِۦ ۚ فَمِنْهُمْ شَقِيٌّ وَسَعِيدٌ ﴿١٠٥﴾

106. ನತದೃಷ್ಟರು ಯಾರೋ—ಅವರು ನರಕದಲ್ಲಿರುತ್ತಾರೆ. ಅಲ್ಲಿ ಅವರು ಚೀತ್ಕರಿಸುತ್ತಲೂ ಕಿರಿಚಾಡುತ್ತಲೂ ಇರುತ್ತಾರೆ.

فَأَمَّا ٱلَّذِينَ شَقُوا۟ فَفِى ٱلنَّارِ لَهُمْ فِيهَا زَفِيرٌ وَشَهِيقٌ ﴿١٠٦﴾

107. ಭೂಮ್ಯಾಕಾಶಗಳು ಅಸ್ತಿತ್ವದಲ್ಲಿರುವ ತನಕ[1] ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುತ್ತಾರೆ. ನಿಮ್ಮ ಪರಿಪಾಲಕನು (ಅಲ್ಲಾಹು) ಇಚ್ಛಿಸಿದವರ ಹೊರತು.[2] ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಅವನು ಬಯಸುವುದನ್ನು ಕಾರ್ಯರೂಪಕ್ಕೆ ತರುತ್ತಾನೆ.

خَٰلِدِينَ فِيهَا مَا دَامَتِ ٱلسَّمَٰوَٰتُ وَٱلْأَرْضُ إِلَّا مَا شَآءَ رَبُّكَ ۚ إِنَّ رَبَّكَ فَعَّالٌ لِّمَا يُرِيدُ ﴿١٠٧﴾

108. ಅದೃಷ್ಟವಂತರು ಯಾರೋ—ಅವರು ಸ್ವರ್ಗದಲ್ಲಿರುತ್ತಾರೆ. ಭೂಮ್ಯಾಕಾಶಗಳು ಅಸ್ತಿತ್ವದಲ್ಲಿರುವ ತನಕ ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುತ್ತಾರೆ. ನಿಮ್ಮ ಪರಿಪಾಲಕನು (ಅಲ್ಲಾಹು) ಇಚ್ಛಿಸಿದವರ ಹೊರತು.[3] ಇದು ಅಂತ್ಯವಿಲ್ಲದ ಕೊಡುಗೆಯಾಗಿದೆ.

وَأَمَّا ٱلَّذِينَ سُعِدُوا۟ فَفِى ٱلْجَنَّةِ خَٰلِدِينَ فِيهَا مَا دَامَتِ ٱلسَّمَٰوَٰتُ وَٱلْأَرْضُ إِلَّا مَا شَآءَ رَبُّكَ ۖ عَطَآءً غَيْرَ مَجْذُوذٍ ﴿١٠٨﴾

109. ಇವರು ಆರಾಧಿಸುತ್ತಿರುವ ದೇವರುಗಳ ಬಗ್ಗೆ (ಅವು ಸುಳ್ಳು ಎಂಬ

فَلَا تَكُ فِى مِرْيَةٍ مِّمَّا يَعْبُدُ هَٰٓؤُلَآءِ ۚ مَا

[1] ಇದನ್ನು ಅಕ್ಷರಾರ್ಥದಲ್ಲಿ ಸ್ವೀಕರಿಸಿದ ಕೆಲವರು ಸತ್ಯನಿಷೇಧಿಗಳು ಶಾಶ್ವತವಾಗಿ ನರಕವಾಸಿಗಳಾಗುವುದಿಲ್ಲ ಎನ್ನುತ್ತಾರೆ. ಆದರೆ ಇದು ತಪ್ಪು. ಏಕೆಂದರೆ ಇಲ್ಲಿ ಇದನ್ನು ಆಲಂಕಾರಿಕ ರೂಪದಲ್ಲಿ ಹೇಳಲಾಗಿದೆ. ಅರಬ್ಬರು ತಮ್ಮ ಮಾತಿನಲ್ಲಿ "ಶಾಶ್ವತತೆ"ಯನ್ನು ಸೂಚಿಸಲು ಈ ಪ್ರಯೋಗವನ್ನು ಬಳಸುತ್ತಿದ್ದರು. ಅಂದರೆ ಭೂಮ್ಯಾಕಾಶಗಳು ಅಸ್ತಿತ್ವದಲ್ಲಿರುವ ತನಕ ನಾನು ಹೀಗೆ ಮಾಡುವುದಿಲ್ಲ ಎನ್ನುತ್ತಿದ್ದರು. ಇದೇ ಪ್ರಯೋಗವನ್ನು ಇಲ್ಲಿ ಬಳಸಲಾಗಿದೆ. ಇದರ ಇನ್ನೊಂದು ಅರ್ಥವೇನೆಂದರೆ ಇಲ್ಲಿ ಉದ್ದೇಶಿಸಿರುವುದು ಈಗ ಅಸ್ತಿತ್ವದಲ್ಲಿರುವ ಭೂಮಿ ಮತ್ತು ಇದಕ್ಕೆ ಹೊಂದಿಕೊಂಡಿರುವ ಆಕಾಶಗಳಲ್ಲ. ಬದಲಿಗೆ, ಪರಲೋಕದ ಭೂಮಿ ಮತ್ತು ಆಕಾಶಗಳಾಗಿವೆ. ಪರಲೋಕದಲ್ಲಿ ಬೇರೆಯೇ ಭೂಮ್ಯಾ-ಕಾಶಗಳಿವೆಯೆಂದು 14:48ರಲ್ಲಿ ಸ್ಪಷ್ಟವಾಗಿ ಹೇಳಲಾಗಿದೆ.

[2] ಇಲ್ಲಿ ಉದ್ದೇಶಿಸಲಾಗಿರುವುದು ಪಾಪಗಳನ್ನು ಮಾಡಿದ ಸತ್ಯವಿಶ್ವಾಸಿಗಳನ್ನಾಗಿದೆ. ಇವರಿಗೆ ಇವರ ಪಾಪಗಳ ಶಿಕ್ಷೆಯಾದ ನಂತರ ಇವರು ಸ್ವರ್ಗವನ್ನು ಪ್ರವೇಶಿಸುವರು. ಇವರು ನರಕದಲ್ಲಿ ಶಾಶ್ವತವಾಗಿ ಉಳಿಯುವುದಿಲ್ಲ.

[3] ಇದು ಕೂಡ ಪಾಪಗಳನ್ನು ಮಾಡಿದ ಸತ್ಯವಿಶ್ವಾಸಿಗಳ ಬಗ್ಗೆಯಾಗಿದೆ. ಇವರು ಇತರ ಸತ್ಯವಿಶ್ವಾಸಿಗಳಂತೆ ಆರಂಭದಲ್ಲಿ ಸ್ವರ್ಗ ಪ್ರವೇಶಿಸುವು-ದಿಲ್ಲ. ಬದಲಿಗೆ, ಇವರ ಶಿಕ್ಷೆ ಮುಗಿದ ನಂತರ ಇವರು ಸ್ವರ್ಗ ಪ್ರವೇಶ ಮಾಡುತ್ತಾರೆ.

يَعۡبُدُونَ إِلَّا كَمَا يَعۡبُدُ ءَابَآؤُهُم مِّن قَبۡلُۚ وَإِنَّا لَمُوَفُّوهُمۡ نَصِيبَهُمۡ غَيۡرَ مَنقُوصٖ ﴿١٠٩﴾

ವಿಷಯದಲ್ಲಿ) ನಿಮಗೆ ಯಾವುದೇ ಸಂಶಯವುಂಟಾಗದಿರಲಿ. ಇವರ ಪೂರ್ವಜರು ಹಿಂದೆ ಆರಾಧಿಸುತ್ತಿದ್ದ ರೀತಿಯಲ್ಲೇ ಇವರೂ ಆರಾಧಿಸುತ್ತಿದ್ದಾರೆ. ನಿಶ್ಚಯವಾಗಿಯೂ ನಾವು ಅವರ ಪಾಲನ್ನು ಯಾವುದೇ ಕಡಿತ ಮಾಡದೆ ಅವರಿಗೆ ಪೂರ್ಣವಾಗಿ ನೀಡುವೆವು.

---

وَلَقَدۡ ءَاتَيۡنَا مُوسَى ٱلۡكِتَٰبَ فَٱخۡتُلِفَ فِيهِۚ وَلَوۡلَا كَلِمَةٞ سَبَقَتۡ مِن رَّبِّكَ لَقُضِيَ بَيۡنَهُمۡۚ وَإِنَّهُمۡ لَفِي شَكّٖ مِّنۡهُ مُرِيبٖ ﴿١١٠﴾

110. ನಿಶ್ಚಯವಾಗಿಯೂ ನಾವು ಮೂಸಾರಿಗೆ ಗ್ರಂಥವನ್ನು ನೀಡಿದೆವು. ಆದರೆ ಅವರು ಅದರಲ್ಲಿ ಭಿನ್ನಮತ ತಳೆದರು. ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಒಂದು ಮಾತು ಮೊದಲೇ ಇಲ್ಲದಿರುತ್ತಿದ್ದರೆ ಅವರ ನಡುವೆ ಈಗಾಗಲೇ ತೀರ್ಪು ನೀಡಲಾಗುತ್ತಿತ್ತು. ನಿಶ್ಚಯವಾಗಿಯೂ ಅವರಿಗೆ ಇದರ (ಕುರ್‌ಆನಿನ) ವಿಷಯದಲ್ಲಿ ಗೊಂದಲಪೂರ್ಣ ಸಂಶಯಗಳಿವೆ.

---

وَإِنَّ كُلّٗا لَّمَّا لَيُوَفِّيَنَّهُمۡ رَبُّكَ أَعۡمَٰلَهُمۡۚ إِنَّهُۥ بِمَا يَعۡمَلُونَ خَبِيرٞ ﴿١١١﴾

111. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಅವರಲ್ಲಿ ಪ್ರತಿಯೊಬ್ಬರಿಗೂ ಅವರ ಕರ್ಮಗಳ ಪೂರ್ಣ ಪ್ರತಿಫಲವನ್ನು ನೀಡುವನು. ನಿಶ್ಚಯವಾಗಿಯೂ ಅವರು ಮಾಡುವ ಕರ್ಮಗಳ ಬಗ್ಗೆ ಅವನು ಸೂಕ್ಷ್ಮವಾಗಿ ತಿಳಿದವನಾಗಿದ್ದಾನೆ.

---

فَٱسۡتَقِمۡ كَمَآ أُمِرۡتَ وَمَن تَابَ مَعَكَ وَلَا تَطۡغَوۡاْۚ إِنَّهُۥ بِمَا تَعۡمَلُونَ بَصِيرٞ ﴿١١٢﴾

112. ಆದ್ದರಿಂದ ನಿಮಗೆ ಆದೇಶಿಸಲಾದಂತೆ ನೀವು ಮತ್ತು ನಿಮ್ಮ ಜೊತೆಗೆ (ಅಲ್ಲಾಹನ ಕಡೆಗೆ) ತಿರುಗಿದವರು ನೇರವಾಗಿ ನಿಲ್ಲಿರಿ. ನೀವು ಎಲ್ಲೆ ಮೀರಬೇಡಿ. ನಿಶ್ಚಯವಾಗಿಯೂ ನೀವು ಮಾಡುವ ಕರ್ಮಗಳನ್ನು ಅವನು ನೋಡುತ್ತಿದ್ದಾನೆ.

---

وَلَا تَرۡكَنُوٓاْ إِلَى ٱلَّذِينَ ظَلَمُواْ فَتَمَسَّكُمُ ٱلنَّارُ وَمَا لَكُم مِّن دُونِ ٱللَّهِ مِنۡ أَوۡلِيَآءَ ثُمَّ لَا تُنصَرُونَ ﴿١١٣﴾

113. ನೀವು ಅಕ್ರಮಿಗಳ ಕಡೆಗೆ ವಾಲಬೇಡಿ. ಹಾಗೇನಾದರೂ ಆದರೆ ನರಕಾಗ್ನಿಯು ನಿಮ್ಮನ್ನು ಸ್ಪರ್ಶಿಸಬಹುದು ಮತ್ತು ಅಲ್ಲಾಹನ ಹೊರತು ನಿಮಗೆ ಯಾವುದೇ ರಕ್ಷಕರೂ ಇರಲಾರರು. ನಂತರ ನಿಮಗೆ ಯಾವುದೇ ಸಹಾಯ ಕೂಡ ದೊರೆಯಲಾರದು.

---

وَأَقِمِ ٱلصَّلَوٰةَ طَرَفَيِ ٱلنَّهَارِ وَزُلَفٗا مِّنَ ٱلَّيۡلِۚ إِنَّ ٱلۡحَسَنَٰتِ يُذۡهِبۡنَ ٱلسَّيِّـَٔاتِۚ ذَٰلِكَ ذِكۡرَىٰ لِلذَّٰكِرِينَ ﴿١١٤﴾

114. ಹಗಲಿನ ಎರಡು ತುದಿಗಳಲ್ಲಿ ಮತ್ತು ರಾತ್ರಿಯ ಕೆಲವು ಸಮಯಗಳಲ್ಲಿ ನಮಾಝನ್ನು ಸಂಸ್ಥಾಪಿಸಿರಿ. ನಿಶ್ಚಯವಾಗಿಯೂ ಸತ್ಕರ್ಮಗಳು ದುಷ್ಕರ್ಮಗಳನ್ನು ಅಳಿಸುತ್ತವೆ. ಇದು ಉಪದೇಶ ಸ್ವೀಕರಿಸುವವರಿಗೆ ಒಂದು ಉಪದೇಶವಾಗಿದೆ.

---

وَٱصۡبِرۡ فَإِنَّ ٱللَّهَ لَا يُضِيعُ أَجۡرَ ٱلۡمُحۡسِنِينَ ﴿١١٥﴾

115. ತಾಳ್ಮೆ ವಹಿಸಿರಿ. ನಿಶ್ಚಯವಾಗಿಯೂ ಅಲ್ಲಾಹು ಒಳಿತು ಮಾಡುವವರ ಪ್ರತಿಫಲವನ್ನು ವ್ಯರ್ಥಗೊಳಿಸುವುದಿಲ್ಲ.

---

فَلَوۡلَا كَانَ مِنَ ٱلۡقُرُونِ مِن قَبۡلِكُمۡ أُوْلُواْ بَقِيَّةٖ يَنۡهَوۡنَ عَنِ ٱلۡفَسَادِ فِي ٱلۡأَرۡضِ إِلَّا قَلِيلٗا

116. ನಿಮಗಿಂತ ಮೊದಲಿನ ತಲೆಮಾರುಗಳಲ್ಲಿ ಭೂಮಿಯಲ್ಲಿ ಕಿಡಿಗೇಡಿತನ ಮಾಡುವುದನ್ನು ವಿರೋಧಿಸುವ ಒಳಿತಿನ ಜನರೇಕೆ ಇರಲಿಲ್ಲ? ಅವರ ಪೈಕಿ ನಾವು ಪಾರು ಮಾಡಿದ

ಕೆಲವರ ಹೊರತು. ಅಕ್ರಮಿಗಳು ನಾವು ಅವರಿಗೆ ಒದಗಿಸಿದ ಸುಖಭೋಗಗಳನ್ನು ಹಿಂಬಾಲಿಸಿದರು. ಅವರು ಅಪರಾಧಿಗಳಾಗಿದ್ದರು.

مِّمَّنْ أَنجَيْنَا مِنْهُمْۗ وَٱتَّبَعَ ٱلَّذِينَ ظَلَمُواْ مَآ أُتْرِفُواْ فِيهِ وَكَانُواْ مُجْرِمِينَ ١١٦

---

117. ನಿಮ್ಮ ಪರಿಪಾಲಕನು (ಅಲ್ಲಾಹು) ಯಾವುದೇ ಊರುಗಳನ್ನು—ಅವುಗಳ ನಿವಾಸಿಗಳು ಸತ್ಕರ್ಮ ಮಾಡುವವರಾಗಿದ್ದರೆ ಅನ್ಯಾಯವಾಗಿ ನಾಶ ಮಾಡುವುದಿಲ್ಲ.

وَمَا كَانَ رَبُّكَ لِيُهْلِكَ ٱلْقُرَىٰ بِظُلْمٍ وَأَهْلُهَا مُصْلِحُونَ ١١٧

---

118. ನಿಮ್ಮ ಪರಿಪಾಲಕನು (ಅಲ್ಲಾಹು) ಇಚ್ಛಿಸುತ್ತಿದ್ದರೆ ಮನುಕುಲವನ್ನು ಒಂದೇ ಸಮುದಾಯವನ್ನಾಗಿ ಮಾಡುತ್ತಿದ್ದನು. ಆದರೆ ಅವರು ಭಿನ್ನಮತ ತಳೆಯುತ್ತಲೇ ಇರುತ್ತಾರೆ.

وَلَوْ شَآءَ رَبُّكَ لَجَعَلَ ٱلنَّاسَ أُمَّةً وَٰحِدَةًۖ وَلَا يَزَالُونَ مُخْتَلِفِينَ ١١٨

---

119. ನಿಮ್ಮ ಪರಿಪಾಲಕನ (ಅಲ್ಲಾಹನ) ದಯೆಗೆ ಪಾತ್ರರಾದವರ ಹೊರತು. ಅವನು ಅವರನ್ನು ಅದಕ್ಕಾಗಿಯೇ ಸೃಷ್ಟಿಸಿದ್ದಾನೆ. “ಜಿನ್ನ್ ಮತ್ತು ಮನುಷ್ಯರಿಂದ ನಾನು ನರಕವನ್ನು ತುಂಬಿಸುವೆನು” ಎಂಬ ನಿಮ್ಮ ಪರಿಪಾಲಕನ (ಅಲ್ಲಾಹನ) ಮಾತು ನೆರವೇರಿದೆ.

إِلَّا مَن رَّحِمَ رَبُّكَۚ وَلِذَٰلِكَ خَلَقَهُمْۗ وَتَمَّتْ كَلِمَةُ رَبِّكَ لَأَمْلَأَنَّ جَهَنَّمَ مِنَ ٱلْجِنَّةِ وَٱلنَّاسِ أَجْمَعِينَ ١١٩

---

120. ಸಂದೇಶವಾಹಕರುಗಳ ಎಲ್ಲಾ ಸಮಾಚಾರಗಳನ್ನು ನಾವು ನಿಮಗೆ ತಿಳಿಸಿಕೊಡುವೆವು—ಅದರ ಮೂಲಕ ತಮ್ಮ ಹೃದಯವನ್ನು ದೃಢಗೊಳಿಸುವುದಕ್ಕಾಗಿ. ಇದರಲ್ಲಿಯೂ (ಈ ಅಧ್ಯಾಯದಲ್ಲಿಯೂ) ನಿಮಗೆ ಸತ್ಯವು ತಲುಪಿದೆ. ಅದು ಸತ್ಯವಿ-ಶ್ವಾಸಿಗಳಿಗೆ ಉಪದೇಶ ಮತ್ತು ಬೋಧನೆಯಾಗಿದೆ.

وَكُلًّا نَّقُصُّ عَلَيْكَ مِنْ أَنۢبَآءِ ٱلرُّسُلِ مَا نُثَبِّتُ بِهِۦ فُؤَادَكَۚ وَجَآءَكَ فِي هَٰذِهِ ٱلْحَقُّ وَمَوْعِظَةٌ وَذِكْرَىٰ لِلْمُؤْمِنِينَ ١٢٠

---

121. ವಿಶ್ವಾಸವಿಡದವರೊಡನೆ ಹೇಳಿರಿ: “ನೀವು ನಿಮ್ಮ ಸ್ಥಾನದಲ್ಲಿ ಕರ್ಮವೆಸಗಿರಿ. ನಿಶ್ಚಯವಾಗಿಯೂ ನಾವು ಕೂಡ ಕರ್ಮವೆಸಗುತ್ತೇವೆ.

وَقُل لِّلَّذِينَ لَا يُؤْمِنُونَ ٱعْمَلُواْ عَلَىٰ مَكَانَتِكُمْ إِنَّا عَٰمِلُونَ ١٢١

---

122. ನೀವು ಕಾಯಿರಿ. ನಾವು ಕೂಡ ಕಾಯುತ್ತೇವೆ.”

وَٱنتَظِرُوٓاْ إِنَّا مُنتَظِرُونَ ١٢٢

---

123. ಭೂಮ್ಯಾಕಾಶಗಳಲ್ಲಿರುವ ಅದೃಶ್ಯ ಜ್ಞಾನಗಳು ಅಲ್ಲಾಹನಿಗೆ ಸೇರಿದ್ದು. ವಿಷಯಗಳೆಲ್ಲವನ್ನು ಅವನ ಬಳಿಗೇ ಮರಳಿಸಲಾ-ಗುತ್ತದೆ. ಆದ್ದರಿಂದ ಅವನನ್ನು ಆರಾಧಿಸಿ ಮತ್ತು ಅವನಲ್ಲಿ ಭರವಸೆಯಿಡಿ. ನೀವು ಮಾಡುವ ಕರ್ಮಗಳ ಬಗ್ಗೆ ನಿಮ್ಮ ಪರಿಪಾಲಕನು (ಅಲ್ಲಾಹು) ನಿರ್ಲಕ್ಷ್ಯನಲ್ಲ.

وَلِلَّهِ غَيْبُ ٱلسَّمَٰوَٰتِ وَٱلْأَرْضِ وَإِلَيْهِ يُرْجَعُ ٱلْأَمْرُ كُلُّهُۥ فَٱعْبُدْهُ وَتَوَكَّلْ عَلَيْهِۚ وَمَا رَبُّكَ بِغَٰفِلٍ عَمَّا تَعْمَلُونَ ١٢٣

# 12. ಯೂಸುಫ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

---

1. ಅಲಿಫ್. ಲಾಮ್. ರಾ. ಇವು ಸ್ಪಷ್ಟ ಗ್ರಂಥದ ವಚನಗಳಾಗಿವೆ.

الٓرۚ تِلۡكَ ءَايَٰتُ ٱلۡكِتَٰبِ ٱلۡمُبِينِ ١

---

2. ನಿಶ್ಚಯವಾಗಿಯೂ ನಾವು ಇದನ್ನು ಅರಬ್ಬಿ ಭಾಷೆಯಲ್ಲಿರುವ ಕುರ್‌ಆನ್ ಆಗಿ ಅವತೀರ್ಣಗೊಳಿಸಿದ್ದೇವೆ. ನೀವು ಅರ್ಥಮಾಡಿಕೊಳ್ಳುವುದಕ್ಕಾಗಿ.

إِنَّآ أَنزَلۡنَٰهُ قُرۡءَٰنًا عَرَبِيّٗا لَّعَلَّكُمۡ تَعۡقِلُونَ ٢

---

3. ನಾವು ಈ ಕುರ್‌ಆನನ್ನು ದೇವವಾಣಿಯ ಮೂಲಕ ನಿಮಗೆ ಅವತೀರ್ಣಗೊಳಿಸಿರುವುದರಿಂದ, ನಿಮಗೆ ಇದರಲ್ಲಿ ಒಂದು ಅತ್ಯುತ್ತಮ ಕಥೆಯನ್ನು ನಿರೂಪಿಸುವೆವು. ಇದಕ್ಕೆ ಮೊದಲು ನಿಮಗೆ ಇದರ ಬಗ್ಗೆ ತಿಳಿದೇ ಇರಲಿಲ್ಲ.

نَحۡنُ نَقُصُّ عَلَيۡكَ أَحۡسَنَ ٱلۡقَصَصِ بِمَآ أَوۡحَيۡنَآ إِلَيۡكَ هَٰذَا ٱلۡقُرۡءَانَ وَإِن كُنتَ مِن قَبۡلِهِۦ لَمِنَ ٱلۡغَٰفِلِينَ ٣

---

4. ಯೂಸುಫ್ ತಮ್ಮ ತಂದೆಯೊಡನೆ ಹೇಳಿದ ಸಂದರ್ಭ: "ಅಪ್ಪಾ! ಖಂಡಿತವಾಗಿಯೂ ನಾನು (ಕನಸಿನಲ್ಲಿ) ಹನ್ನೊಂದು ನಕ್ಷತ್ರಗಳನ್ನು, ಸೂರ್ಯನನ್ನು ಮತ್ತು ಚಂದ್ರನನ್ನು ಕಂಡಿದ್ದೇನೆ. ಅವು ನನಗೆ ಸಾಷ್ಟಾಂಗ ಮಾಡುವುದನ್ನು ಕಂಡಿದ್ದೇನೆ."[1]

إِذۡ قَالَ يُوسُفُ لِأَبِيهِ يَٰٓأَبَتِ إِنِّي رَأَيۡتُ أَحَدَ عَشَرَ كَوۡكَبٗا وَٱلشَّمۡسَ وَٱلۡقَمَرَ رَأَيۡتُهُمۡ لِي سَٰجِدِينَ ٤

---

5. ತಂದೆ ಹೇಳಿದರು: "ಮಗೂ! ನಿನ್ನ ಕನಸನ್ನು ನಿನ್ನ ಸಹೋದರರಿಗೆ ತಿಳಿಸಬೇಡ. ಹಾಗೇನಾದರೂ ಆದರೆ ಅವರು ನಿನ್ನ ವಿರುದ್ಧ ಪಿತೂರಿ ಮಾಡುವರು. ನಿಶ್ಚಯವಾಗಿಯೂ ಶೈತಾನನು ಮನುಷ್ಯನ ಪ್ರತ್ಯಕ್ಷ ಶತ್ರುವಾಗಿದ್ದಾನೆ.

قَالَ يَٰبُنَيَّ لَا تَقۡصُصۡ رُءۡيَاكَ عَلَىٰٓ إِخۡوَتِكَ فَيَكِيدُواْ لَكَ كَيۡدًاۖ إِنَّ ٱلشَّيۡطَٰنَ لِلۡإِنسَٰنِ عَدُوّٞ مُّبِينٞ ٥

---

6. ಈ ರೀತಿಯಲ್ಲಿ ನಿನ್ನ ಪರಿಪಾಲಕನು (ಅಲ್ಲಾಹು) ನಿನ್ನನ್ನು ಆರಿಸುವನು ಮತ್ತು ನಿನಗೆ ಕನಸುಗಳ ವ್ಯಾಖ್ಯಾನವನ್ನು ಕಲಿಸುವನು. ನಿನ್ನ ಪೂರ್ವ ಪಿತಾಮಹರಾದ ಇಬ್ರಾಹೀಮ್ ಮತ್ತು ಇಸ್‌ಹಾಕರ ಮೇಲೆ ಅವನು ತನ್ನ ಅನುಗ್ರಹವನ್ನು ಪೂರ್ಣಗೊಳಿಸಿದಂತೆ ನಿನ್ನ ಮೇಲೂ ಯಾಕೂಬರ ಕುಟುಂಬದ ಮೇಲೂ ಪೂರ್ಣಗೊಳಿಸುವನು. ನಿಶ್ಚಯವಾಗಿಯೂ ನಿನ್ನ ಪರಿಪಾಲಕನು (ಅಲ್ಲಾಹು) ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ."

وَكَذَٰلِكَ يَجۡتَبِيكَ رَبُّكَ وَيُعَلِّمُكَ مِن تَأۡوِيلِ ٱلۡأَحَادِيثِ وَيُتِمُّ نِعۡمَتَهُۥ عَلَيۡكَ وَعَلَىٰٓ ءَالِ يَعۡقُوبَ كَمَآ أَتَمَّهَا عَلَىٰٓ أَبَوَيۡكَ مِن قَبۡلُ إِبۡرَٰهِيمَ وَإِسۡحَٰقَۚ إِنَّ رَبَّكَ عَلِيمٌ حَكِيمٞ ٦

---

7. ನಿಶ್ಚಯವಾಗಿಯೂ ಯೂಸುಫ್ ಮತ್ತು ಅವರ ಸಹೋದರರಲ್ಲಿ

لَّقَدۡ كَانَ فِي يُوسُفَ وَإِخۡوَتِهِۦٓ ءَايَٰتٞ لِّلسَّآئِلِينَ ٧

---

[1] ಹನ್ನೊಂದು ನಕ್ಷತ್ರಗಳು ಎಂದರೆ ಯೂಸುಫರ (ಅವರ ಮೇಲೆ ಶಾಂತಿಯಿರಲಿ) ಹನ್ನೊಂದು ಸಹೋದರರು. ಸೂರ್ಯ ಎಂದರೆ ತಂದೆ (ಯಾಕೂಬ್) ಮತ್ತು ಚಂದ್ರ ಎಂದರೆ ತಾಯಿ.

ಕೇಳುಗರಿಗೆ (ದೊಡ್ಡ) ದೃಷ್ಟಾಂತಗಳಿವೆ.

8. ಅವರು (ಸಹೋದರರು) ಹೇಳಿದ ಸಂದರ್ಭ: "ನಮ್ಮ ತಂದೆಗೆ ನಮಗಿಂತಲೂ ಹೆಚ್ಚು ಯೂಸುಫ್ ಮತ್ತು ಅವನ ಸಹೋದರನ ಮೇಲೆ ಪ್ರೀತಿಯಿದೆ. ನಾವೊಂದು (ಬಲಿಷ್ಠ) ತಂಡವಾಗಿದ್ದೇವೆ. ನಿಶ್ಚಯವಾಗಿಯೂ ನಮ್ಮ ತಂದೆ ಸ್ಪಷ್ಟ ಪ್ರಮಾದದಲ್ಲಿದ್ದಾರೆ.[1]

إِذۡ قَالُواْ لَيُوسُفُ وَأَخُوهُ أَحَبُّ إِلَىٰٓ أَبِينَا مِنَّا وَنَحۡنُ عُصۡبَةٌ إِنَّ أَبَانَا لَفِي ضَلَٰلٖ مُّبِينٍ ٨

9. ಯೂಸುಫನನ್ನು ಕೊಲ್ಲಿರಿ ಅಥವಾ ಅವನನ್ನು ಯಾವುದಾದರೂ (ನಿರ್ಜನ) ಸ್ಥಳದಲ್ಲಿ ಎಸೆಯಿರಿ. ಆಗ ನಿಮ್ಮ ತಂದೆಯ ಮುಖಭಾವವು (ಪ್ರೀತಿ) ನಿಮಗೆ ಸೀಮಿತವಾಗುವುದು. ಅನಂತರ ನೀವು ನೀತಿವಂತ ಜನರಾಗಿ ಬಿಡಿ."[2]

ٱقۡتُلُواْ يُوسُفَ أَوِ ٱطۡرَحُوهُ أَرۡضٗا يَخۡلُ لَكُمۡ وَجۡهُ أَبِيكُمۡ وَتَكُونُواْ مِنۢ بَعۡدِهِۦ قَوۡمٗا صَٰلِحِينَ ٩

10. ಅವರಲ್ಲೊಬ್ಬನು ಹೇಳಿದನು: "ಯೂಸುಫನನ್ನು ಕೊಲ್ಲಬೇಡಿ. ಬದಲಿಗೆ, ಅವನನ್ನು ಪಾಳು ಬಾವಿಯ ತಳಕ್ಕೆ ಎಸೆಯಿರಿ. (ಆ ದಾರಿಯಲ್ಲಿ ಸಾಗುವ) ಕೆಲವು ಪ್ರಯಾಣಿಕರು ಅವನನ್ನು ಎತ್ತಿಕೊಳ್ಳುವರು. ನೀವೇನಾದರೂ ಮಾಡುವುದಿದ್ದರೆ ಇದನ್ನೇ ಮಾಡಿರಿ."

قَالَ قَآئِلٞ مِّنۡهُمۡ لَا تَقۡتُلُواْ يُوسُفَ وَأَلۡقُوهُ فِي غَيَٰبَتِ ٱلۡجُبِّ يَلۡتَقِطۡهُ بَعۡضُ ٱلسَّيَّارَةِ إِن كُنتُمۡ فَٰعِلِينَ ١٠

11. ಅವರು ಹೇಳಿದರು: "ಅಪ್ಪಾ! ಯೂಸುಫನ ವಿಷಯದಲ್ಲಿ ನೀವೇಕೆ ನಮ್ಮನ್ನು ನಂಬುವುದಿಲ್ಲ? ನಿಶ್ಚಯವಾಗಿಯೂ ನಾವು ಅವನ ಹಿತಚಿಂತಕರಾಗಿದ್ದೇವೆ.

قَالُواْ يَٰٓأَبَانَا مَا لَكَ لَا تَأۡمَ۫نَّا عَلَىٰ يُوسُفَ وَإِنَّا لَهُۥ لَنَٰصِحُونَ ١١

12. ನಾಳೆ ಅವನನ್ನು ನಮ್ಮೊಡನೆ ಕಳುಹಿಸಿಕೊಡಿ. ಅವನು ಯಥೇಷ್ಟವಾಗಿ ಆನಂದಿಸುತ್ತಾ ಆಟವಾಡಲಿ. ನಿಶ್ಚಯವಾಗಿಯೂ ಅವನ ರಕ್ಷಣೆ ಮಾಡುವ ಹೊಣೆ ನಮ್ಮದು."

أَرۡسِلۡهُ مَعَنَا غَدٗا يَرۡتَعۡ وَيَلۡعَبۡ وَإِنَّا لَهُۥ لَحَٰفِظُونَ ١٢

13. ತಂದೆ ಹೇಳಿದರು: "ನೀವು ಅವನನ್ನು ಕೊಂಡೊಯ್ಯುವುದನ್ನು ನೆನೆಯುವಾಗ ನನಗೆ ಬಹಳ ಸಂಕಟವಾಗುತ್ತದೆ. ಅದೂ ಅಲ್ಲದೆ, ನೀವು ಅವನನ್ನು ಗಮನಿಸದೆ ಇರುವಾಗ ತೋಳ ಅವನನ್ನು ತಿಂದುಬಿಡಬಹುದೋ ಎಂದು ನನಗೆ ಭಯವಾಗುತ್ತಿದೆ."

قَالَ إِنِّي لَيَحۡزُنُنِيٓ أَن تَذۡهَبُواْ بِهِۦ وَأَخَافُ أَن يَأۡكُلَهُ ٱلذِّئۡبُ وَأَنتُمۡ عَنۡهُ غَٰفِلُونَ ١٣

14. ಅವರು ಹೇಳಿದರು: "ನಾವು (ಬಲಿಷ್ಠ) ತಂಡವಾಗಿದ್ದೂ ಸಹ ತೋಳವು ಅವನನ್ನು ತಿಂದರೆ, ನಷ್ಟಹೊಂದುವವರು ನಾವೇ

قَالُواْ لَئِنۡ أَكَلَهُ ٱلذِّئۡبُ وَنَحۡنُ عُصۡبَةٌ إِنَّآ إِذٗا لَّخَٰسِرُونَ ١٤

[1] ಯೂಸುಫರ ಸಹೋದರ ಎಂದರೆ ಬಿನ್ಯಾಮೀನ್. ಇವರಿಬ್ಬರು ಒಂದು ತಾಯಿಯ ಮಕ್ಕಳು. ಉಳಿದ ಹತ್ತು ಮಂದಿ ಇನ್ನೊಬ್ಬ ತಾಯಿಯ ಮಕ್ಕಳು. ಯಾಕೂಬರಿಗೆ (ಅವರ ಮೇಲೆ ಶಾಂತಿಯಿರಲಿ) ಇವರಿಗಿಂತಲೂ ಹೆಚ್ಚು ಪ್ರೀತಿ ಯೂಸುಫ್ ಮತ್ತು ಬಿನ್ಯಾಮೀನರ ಮೇಲಿತ್ತು. ನಾವು ಹತ್ತು ಮಂದಿ ಸಹೋದರರು ಬಲಿಷ್ಠರು ಮತ್ತು ಬಹುಸಂಖ್ಯಾತರಾಗಿದ್ದೂ ಸಹ, ತಂದೆ ನಮಗಿಂತಲೂ ಹೆಚ್ಚು ಅವರಿಬ್ಬರನ್ನು ಪ್ರೀತಿಸುತ್ತಿರುವುದು ಅವರಿಗೆ ಸ್ಪಷ್ಟ ಪ್ರಮಾದವಾಗಿ ಕಾಣುತ್ತಿದೆ ಎಂದರ್ಥ.

[2] ಅಂದರೆ ಯೂಸುಫರನ್ನು (ಅವರ ಮೇಲೆ ಶಾಂತಿಯಿರಲಿ) ಕೊಂದ ನಂತರ ಅಲ್ಲಾಹನಲ್ಲಿ ಪಶ್ಚಾತ್ತಾಪಪಟ್ಟು ಕ್ಷಮೆ ಕೇಳಿರಿ. ಆಗ ಅವನು ನಿಮ್ಮನ್ನು ಕ್ಷಮಿಸುತ್ತಾನೆ. ನಂತರ ನೀವು ಉತ್ತಮ ಜನರಾಗಿ ಬಿಡಿ.

ಆಗಿದ್ದೇವೆ."

15. ನಂತರ ಅವರು ಯೂಸುಫರೊಂದಿಗೆ ಹೊರಟು, ಅವನನ್ನು ಪಾಳು ಬಾವಿಯ ತಳಕ್ಕೆ ಎಸೆಯುವುದೆಂದು ಒಮ್ಮತದಿಂದ ನಿರ್ಧರಿಸಿದಾಗ, ನಾವು ಯೂಸುಫರಿಗೆ ಹೀಗೆ ದೇವವಾಣಿಯನ್ನು ನೀಡಿದೆವು: "ಅವರ ಈ ಕೃತ್ಯದ ಬಗ್ಗೆ ನೀವು ಖಂಡಿತ ಅವರಿಗೆ ತಿಳಿಸುವಿರಿ. ಆ ಸಂದರ್ಭದಲ್ಲಿ ಅವರಿಗೆ ಅದರ ನೆನಪೇ ಇರಲಾರದು."

فَلَمَّا ذَهَبُواْ بِهِۦ وَأَجۡمَعُوٓاْ أَن يَجۡعَلُوهُ فِي غَيَٰبَتِ ٱلۡجُبِّۚ وَأَوۡحَيۡنَآ إِلَيۡهِ لَتُنَبِّئَنَّهُم بِأَمۡرِهِمۡ هَٰذَا وَهُمۡ لَا يَشۡعُرُونَ ﴿١٥﴾

16. ರಾತ್ರಿಯಾಗುತ್ತಲೇ ಅವರು ಅಳುತ್ತಾ ತಮ್ಮ ತಂದೆಯ ಬಳಿಗೆ ಬಂದರು.

وَجَآءُوٓ أَبَاهُمۡ عِشَآءٗ يَبۡكُونَ ﴿١٦﴾

17. ಅವರು ಹೇಳಿದರು: "ಅಪ್ಪಾ! ನಾವು ಓಟದ ಸ್ಪರ್ಧೆ ಮಾಡಿ ಓಡಿದೆವು. ಯೂಸುಫನನ್ನು ನಮ್ಮ ಸರಂಜಾಮುಗಳ ಬಳಿ ಬಿಟ್ಟಿದ್ದೆವು. ಆಗ ತೋಳ ಅವನನ್ನು ಕೊಂದು ತಿಂದಿತು. ನಾವು ಸತ್ಯ ಹೇಳುವವರಾಗಿದ್ದರೂ ಸಹ ನೀವು ನಮ್ಮನ್ನು ನಂಬಲಾರಿರಿ."

قَالُواْ يَٰٓأَبَانَآ إِنَّا ذَهَبۡنَا نَسۡتَبِقُ وَتَرَكۡنَا يُوسُفَ عِندَ مَتَٰعِنَا فَأَكَلَهُ ٱلذِّئۡبُۖ وَمَآ أَنتَ بِمُؤۡمِنٖ لَّنَا وَلَوۡ كُنَّا صَٰدِقِينَ ﴿١٧﴾

18. ಅವರು ಯೂಸುಫರ ಅಂಗಿಗೆ ನಕಲಿ ರಕ್ತವನ್ನು ಹಚ್ಚಿ ತಂದರು.[1] ತಂದೆ ಹೇಳಿದರು: "ಅಲ್ಲ, ವಾಸ್ತವವಾಗಿ ನೀವು ನಿಮ್ಮ ಮನಸ್ಸಿನಲ್ಲಿಯೇ ಒಂದು ವಿಷಯವನ್ನು ಕಲ್ಪಿಸಿ ತಂದಿದ್ದೀರಿ. ಆದ್ದರಿಂದ ತಾಳ್ಮೆಯಿಂದಿರುವುದೇ ಉತ್ತಮ. ನೀವು ವರ್ಣಿಸಿ ಹೇಳುವ ಈ ವಿಷಯದಲ್ಲಿ ನಾನು ಅಲ್ಲಾಹನಲ್ಲಿ ಮಾತ್ರ ಸಹಾಯ ಬೇಡುತ್ತೇನೆ."

وَجَآءُو عَلَىٰ قَمِيصِهِۦ بِدَمٖ كَذِبٖۚ قَالَ بَلۡ سَوَّلَتۡ لَكُمۡ أَنفُسُكُمۡ أَمۡرٗاۖ فَصَبۡرٞ جَمِيلٞۖ وَٱللَّهُ ٱلۡمُسۡتَعَانُ عَلَىٰ مَا تَصِفُونَ ﴿١٨﴾

19. ಪ್ರಯಾಣಿಕರ ಒಂದು ತಂಡ ಅಲ್ಲಿಗೆ ಬಂತು. ಅವರು ನೀರು ತರುವವನನ್ನು (ನೀರಿಗಾಗಿ) ಕಳುಹಿಸಿದರು. ಅವನು ತನ್ನ ಬಕೆಟ್ಟನ್ನು ಇಳಿಸಿದನು. ನಂತರ ಕೂಗಿ ಹೇಳಿದನು: "ವಾಹ್! ಶುಭ ಸುದ್ದಿ! ಇಲ್ಲೊಬ್ಬ ಹುಡುಗ ಇದ್ದಾನೆ!" ಅವರು ಯೂಸುಫರನ್ನು ಮಾರಾಟದ ಸರಕಾಗಿ ಮಾಡಿ ಬಚ್ಚಿಟ್ಟರು. ಅವರು ಮಾಡುತ್ತಿರುವ ಕೆಲಸಗಳ ಬಗ್ಗೆ ಅಲ್ಲಾಹು ಬಹಳ ಚೆನ್ನಾಗಿ ತಿಳಿದಿದ್ದಾನೆ.

وَجَآءَتۡ سَيَّارَةٞ فَأَرۡسَلُواْ وَارِدَهُمۡ فَأَدۡلَىٰ دَلۡوَهُۥۖ قَالَ يَٰبُشۡرَىٰ هَٰذَا غُلَٰمٞۚ وَأَسَرُّوهُ بِضَٰعَةٗۚ وَٱللَّهُ عَلِيمُۢ بِمَا يَعۡمَلُونَ ﴿١٩﴾

20. ಅವರು ಯೂಸುಫರನ್ನು ಚಿಲ್ಲರೆ ಕಾಸಿಗೆ—ಬೆರಳೆಣಿಕೆಯ ಬೆಳ್ಳಿ ನಾಣ್ಯಗಳಿಗೆ—ಮಾರಾಟ ಮಾಡಿದರು. ಅವರಿಗೆ ಯೂಸುಫರ ಬಗ್ಗೆ ಯಾವುದೇ ಆಸಕ್ತಿಯಿರಲಿಲ್ಲ.

وَشَرَوۡهُ بِثَمَنِۭ بَخۡسٖ دَرَٰهِمَ مَعۡدُودَةٖ وَكَانُواْ فِيهِ مِنَ ٱلزَّٰهِدِينَ ﴿٢٠﴾

[1] ಅವರೊಂದು ಕುರಿಯನ್ನು ಕೊಯ್ದು ಅದರ ರಕ್ತವನ್ನು ಯೂಸುಫರ ಬಟ್ಟೆಗೆ ಹಚ್ಚಿದರು. ಆದರೆ ಅಂಗಿಯನ್ನು ತೋಳ ತಿಂದ ರೀತಿಯಲ್ಲಿ ಹರಿಯಲು ಅವರು ಮರೆತು ಬಿಟ್ಟಿದ್ದರು.

21. ಈಜಿಪ್ಟಿನಲ್ಲಿ ಅವರನ್ನು ಖರೀದಿಸಿದ ವ್ಯಕ್ತಿ[1] ತನ್ನ ಪತ್ನಿಯೊಂದಿಗೆ ಹೇಳಿದನು: "ಇವನೊಡನೆ ಗೌರವದಿಂದ ವರ್ತಿಸು. ಇವನಿಂದ ನಮಗೆ ಉಪಕಾರವಾಗಬಹುದು ಅಥವಾ ನಮಗೆ ಇವನನ್ನು ಮಗನಾಗಿ ಸ್ವೀಕರಿಸಿಕೊಳ್ಳಬಹುದು." ಈ ರೀತಿ ನಾವು ಯೂಸುಫರಿಗೆ (ಈಜಿಪ್ಟಿನ) ಭೂಮಿಯಲ್ಲಿ ನೆಲೆಯನ್ನು ಮಾಡಿಕೊಟ್ಟೆವು. ಅವರಿಗೆ ಕನಸುಗಳ ವ್ಯಾಖ್ಯಾನವನ್ನು ಕಲಿಸಿ-ಕೊಡುವುದಕ್ಕಾಗಿ. ಅಲ್ಲಾಹು ತನ್ನ ಎಲ್ಲಾ ವ್ಯವಹಾರಗ-ಳಲ್ಲಿ ಅಜೇಯನಾಗಿದ್ದಾನೆ. ಆದರೆ ಜನರಲ್ಲಿ ಹೆಚ್ಚಿನವರು ತಿಳಿಯುವುದಿಲ್ಲ.

وَقَالَ ٱلَّذِى ٱشْتَرَىٰهُ مِن مِّصْرَ لِٱمْرَأَتِهِۦٓ أَكْرِمِى مَثْوَىٰهُ عَسَىٰٓ أَن يَنفَعَنَآ أَوْ نَتَّخِذَهُۥ وَلَدًا ۚ وَكَذَٰلِكَ مَكَّنَّا لِيُوسُفَ فِى ٱلْأَرْضِ وَلِنُعَلِّمَهُۥ مِن تَأْوِيلِ ٱلْأَحَادِيثِ ۚ وَٱللَّهُ غَالِبٌ عَلَىٰٓ أَمْرِهِۦ وَلَٰكِنَّ أَكْثَرَ ٱلنَّاسِ لَا يَعْلَمُونَ ﴿٢١﴾

22. ನಂತರ ಯೂಸುಫ್ ಪ್ರೌಢರಾದಾಗ ನಾವು ಅವರಿಗೆ ವಿವೇಕ ಮತ್ತು ಜ್ಞಾನವನ್ನು ನೀಡಿದೆವು. ಒಳಿತು ಮಾಡುವವರಿಗೆ ನಾವು ಈ ರೀತಿ ಪ್ರತಿಫಲವನ್ನು ನೀಡುತ್ತೇವೆ.

وَلَمَّا بَلَغَ أَشُدَّهُۥٓ ءَاتَيْنَٰهُ حُكْمًا وَعِلْمًا ۚ وَكَذَٰلِكَ نَجْزِى ٱلْمُحْسِنِينَ ﴿٢٢﴾

23. ಯೂಸುಫ್ ಯಾವ ಮಹಿಳೆಯ ಮನೆಯಲ್ಲಿದ್ದರೋ ಅವಳು ಯೂಸುಫರನ್ನು ಪುಸಲಾಯಿಸಲು ಪ್ರಾರಂಭಿಸಿದಳು. ಆಕೆ ಕದಗಳನ್ನೆಲ್ಲಾ ಮುಚ್ಚಿ "ಇತ್ತ ಬಾ" ಎಂದು ಕರೆದಳು. ಯೂಸುಫ್ ಹೇಳಿದರು: "ಅಲ್ಲಾಹನಿಗೆ ಶರಣು! ಅವನು ನನ್ನ ಒಡೆಯ. ಅವನು ನನ್ನನ್ನು ಬಹಳ ಚೆನ್ನಾಗಿ ನೋಡಿಕೊಂಡಿದ್ದಾನೆ. ನಿಶ್ಚಯವಾಗಿಯೂ ಅಕ್ರಮಿಗಳು ಯಶಸ್ವಿಯಾಗುವುದಿಲ್ಲ."

وَرَٰوَدَتْهُ ٱلَّتِى هُوَ فِى بَيْتِهَا عَن نَّفْسِهِۦ وَغَلَّقَتِ ٱلْأَبْوَٰبَ وَقَالَتْ هَيْتَ لَكَ ۚ قَالَ مَعَاذَ ٱللَّهِ ۖ إِنَّهُۥ رَبِّىٓ أَحْسَنَ مَثْوَاىَ ۖ إِنَّهُۥ لَا يُفْلِحُ ٱلظَّٰلِمُونَ ﴿٢٣﴾

24. ಅವಳು ಯೂಸುಫರಲ್ಲಿ ಅನುರಕ್ತಳಾಗಿದ್ದಳು. ತಮ್ಮ ಪರಿಪಾಲಕನ (ಅಲ್ಲಾಹನ) ಸಾಕ್ಷ್ಯವನ್ನು ಕಾಣದಿರುತ್ತಿದ್ದರೆ ಯೂಸುಫ್ ಕೂಡ ಆಕೆಯಲ್ಲಿ ಅನುರಕ್ತರಾಗುತ್ತಿದ್ದರು. ಈ ರೀತಿ ಅವರಿಂದ ದುಷ್ಕರ್ಮ ಮತ್ತು ಅಶ್ಲೀಲಕೃತ್ಯವನ್ನು ದೂರ ಸರಿಸಲು (ನಾವು ಹೀಗೆ ಮಾಡಿದೆವು). ನಿಶ್ಚಯವಾಗಿಯೂ ಅವರು ನಮ್ಮ ನಿಷ್ಕಳಂಕ ದಾಸರಲ್ಲಿ ಸೇರಿದವರಾಗಿದ್ದಾರೆ.

وَلَقَدْ هَمَّتْ بِهِۦ ۖ وَهَمَّ بِهَا لَوْلَآ أَن رَّءَا بُرْهَٰنَ رَبِّهِۦ ۚ كَذَٰلِكَ لِنَصْرِفَ عَنْهُ ٱلسُّوٓءَ وَٱلْفَحْشَآءَ ۚ إِنَّهُۥ مِنْ عِبَادِنَا ٱلْمُخْلَصِينَ ﴿٢٤﴾

25. ಅವರಿಬ್ಬರೂ ಬಾಗಿಲ ಬಳಿಗೆ ವೇಗವಾಗಿ ಓಡಿದರು. ಅವಳು ಯೂಸುಫರ ಅಂಗಿಯನ್ನು ಹಿಂದಿನಿಂದ ಎಳೆದು ಹರಿದಳು. ಅವರಿಬ್ಬರೂ ಬಾಗಿಲ ಬಳಿ ಅವಳ ಯಜಮಾನನನ್ನು (ಗಂಡನನ್ನು) ಕಂಡರು. ಅವಳು ಹೇಳಿದಳು: "ಯಾರು ನಿಮ್ಮ ಹೆಂಡತಿಯೊಂದಿಗೆ ಕೆಟ್ಟ ಇರಾದೆ ಇಟ್ಟುಕೊಳ್ಳುತ್ತಾನೋ ಅವನಿಗೆ

وَٱسْتَبَقَا ٱلْبَابَ وَقَدَّتْ قَمِيصَهُۥ مِن دُبُرٍ وَأَلْفَيَا سَيِّدَهَا لَدَا ٱلْبَابِ ۚ قَالَتْ مَا جَزَآءُ مَنْ أَرَادَ بِأَهْلِكَ سُوٓءًا إِلَّآ أَن يُسْجَنَ أَوْ عَذَابٌ أَلِيمٌ ﴿٢٥﴾

[1] ಆ ಕಾಲದಲ್ಲಿ ರಯಾನ್ ಬಿನ್ ವಲೀದ್ ಎಂಬಾತ ಈಜಿಪ್ಟಿನ ಅರಸನಾಗಿದ್ದ ಮತ್ತು ಯೂಸುಫರನ್ನು (ಅವರ ಮೇಲೆ ಶಾಂತಿಯಿರಲಿ) ಖರೀದಿಸಿದ ವ್ಯಕ್ತಿ ಆತನ ಮಂತ್ರಿಯಾಗಿದ್ದ. ಅಝೀಝ್ ಎಂಬುದು ಈತನ ಬಿರುದಾಗಿತ್ತು. ಈತನ ಪತ್ನಿಯ ಹೆಸರು ರಾಈಲ್ ಅಥವಾ ಝುಲೈಖಾ ಎಂದು ಹೇಳಲಾಗುತ್ತದೆ.

ನೀಡಲಾಗುವ ಶಿಕ್ಷೆ ಅವನನ್ನು ಕಾರಾಗೃಹಕ್ಕೆ ತಳ್ಳುವುದು ಅಥವಾ ಯಾತನಾಮಯ ಶಿಕ್ಷೆ ನೀಡುವುದು ಮಾತ್ರವಾಗಿರಬೇಕು."

---

26. ಯೂಸುಫ್ ಹೇಳಿದರು: "ಅವಳೇ ನನ್ನನ್ನು ಪುಸಲಾಯಿಸಲು ಬಂದವಳು." ಆಗ ಅವಳ ಕುಟುಂಬದ ಒಬ್ಬ ವ್ಯಕ್ತಿ ಸಾಕ್ಷಿ ನುಡಿಯುತ್ತಾ ಹೇಳಿದನು: "ಅವನ ಅಂಗಿ ಮುಂದಿನಿಂದ ಹರಿದಿದ್ದರೆ ಅವಳು ಹೇಳುವುದು ಸತ್ಯವಾಗಿದೆ ಮತ್ತು ಅವನು ಸುಳ್ಳುಗಾರನಾಗಿದ್ದಾನೆ.

قَالَ هِيَ رَٰوَدَتْنِي عَن نَّفْسِي ۚ وَشَهِدَ شَاهِدٌ مِّنْ
أَهْلِهَآ إِن كَانَ قَمِيصُهُۥ قُدَّ مِن قُبُلٍ فَصَدَقَتْ
وَهُوَ مِنَ ٱلْكَٰذِبِينَ ٢٦

---

27. ಆದರೆ ಅವನ ಅಂಗಿ ಹಿಂದಿನಿಂದ ಹರಿದಿದ್ದರೆ ಅವಳು ಸುಳ್ಳು ಹೇಳುತ್ತಿದ್ದಾಳೆ ಮತ್ತು ಅವನು ಸತ್ಯವಂತನಾಗಿದ್ದಾನೆ."

وَإِن كَانَ قَمِيصُهُۥ قُدَّ مِن دُبُرٍ فَكَذَبَتْ وَهُوَ
مِنَ ٱلصَّٰدِقِينَ ٢٧

---

28. ಯೂಸುಫರ ಅಂಗಿ ಹಿಂದಿನಿಂದ ಹರಿದಿರುವುದು ಕಂಡಾಗ ಅವನು (ಅವಳ ಗಂಡ) ಹೇಳಿದನು: "ಇದು ನಿಮ್ಮ (ಮಹಿಳೆಯರ) ಪಿತೂರಿಗಳಲ್ಲಿ ಒಂದಾಗಿದೆ. ನಿಶ್ಚಯವಾಗಿಯೂ ನಿಮ್ಮ ಪಿತೂರಿ ಭಯಾನಕವಾಗಿದೆ.

فَلَمَّا رَءَا قَمِيصَهُۥ قُدَّ مِن دُبُرٍ قَالَ إِنَّهُۥ مِن
كَيْدِكُنَّ ۖ إِنَّ كَيْدَكُنَّ عَظِيمٌ ٢٨

---

29. ಯೂಸುಫ್! ನೀನು ಚಿಂತೆ ಮಾಡಬೇಡ. (ಓ ಹೆಣ್ಣೇ!) ನೀನು ನಿನ್ನ ಪಾಪಕ್ಕೆ ಕ್ಷಮೆ ಕೇಳು. ನಿಶ್ಚಯವಾಗಿಯೂ ನೀನು ತಪ್ಪು ಮಾಡಿದವಳಾಗಿರುವೆ."

يُوسُفُ أَعْرِضْ عَنْ هَٰذَا ۚ وَٱسْتَغْفِرِي لِذَنۢبِكِ ۖ
إِنَّكِ كُنتِ مِنَ ٱلْخَاطِـِٔينَ ٢٩

---

30. ನಗರದ ಕೆಲವು ಮಹಿಳೆಯರು ಗುಸುಗುಸು ಮಾತನಾಡತೊಡಗಿದರು: "ಅಝೀಝರ ಹೆಂಡತಿ ಅವಳ ಗುಲಾಮ ಹುಡುಗನನ್ನು ಪುಸಲಾಯಿಸಿದ್ದಾಳೆ. ಆಕೆ ಅವನಲ್ಲಿ ಸಂಪೂರ್ಣ ಭಾವಪರವಶಳಾಗಿದ್ದಾಳೆ; ನಿಶ್ಚಯವಾಗಿಯೂ ಅವಳು ಸ್ಪಷ್ಟ ದುರ್ಮಾರ್ಗದಲ್ಲಿರುವಂತೆ ತೋರುತ್ತಿದೆ."

وَقَالَ نِسْوَةٌ فِي ٱلْمَدِينَةِ ٱمْرَأَتُ ٱلْعَزِيزِ تُرَٰوِدُ
فَتَىٰهَا عَن نَّفْسِهِۦ ۖ قَدْ شَغَفَهَا حُبًّا ۖ إِنَّا لَنَرَىٰهَا
فِي ضَلَٰلٍ مُّبِينٍ ٣٠

---

31. ಮಹಿಳೆಯರ ಈ ಪುಕಾರು ಕೇಳಿದಾಗ ಆಕೆ ಅವರ ಬಳಿಗೆ ಆಳುಗಳನ್ನು ಕಳುಹಿಸಿ ಬರಮಾಡಿಸಿದಳು. ನಂತರ ಅವರಿಗೆ ಒರಗಿ ಕೂರುವ ಆಸನಗಳ ವ್ಯವಸ್ಥೆ ಮಾಡಿ, ಅವರೆಲ್ಲರಿಗೂ ಒಂದೊಂದು ಚೂರಿಯನ್ನು ನೀಡಿದಳು. ನಂತರ ಯೂಸುಫರನ್ನು ಕರೆದು, "ಇವರ ಮಂದೆ ಬಾ" ಎಂದಳು. ಯೂಸುಫರನ್ನು ಕಂಡಾಗ ಆ ಮಹಿಳೆಯರು ಹುಬ್ಬೇರಿಸಿದರು ಮತ್ತು ತಮ್ಮ ಕೈಗಳನ್ನೇ ಕೊಯ್ದರು. ಅವರು (ಬೆರಗಾಗಿ) ಹೇಳಿದರು: "ಅಲ್ಲಾಹು ಪರಿಶುದ್ಧನು! ಇವನು ಮನುಷ್ಯನೇ ಅಲ್ಲ! ಇವನೊಬ್ಬ ಶ್ರೇಷ್ಠ ದೇವದೂತನೇ ಸರಿ!"

فَلَمَّا سَمِعَتْ بِمَكْرِهِنَّ أَرْسَلَتْ إِلَيْهِنَّ
وَأَعْتَدَتْ لَهُنَّ مُتَّكَـًٔا وَءَاتَتْ كُلَّ وَٰحِدَةٍ مِّنْهُنَّ
سِكِّينًا وَقَالَتِ ٱخْرُجْ عَلَيْهِنَّ ۖ فَلَمَّا رَأَيْنَهُۥٓ
أَكْبَرْنَهُۥ وَقَطَّعْنَ أَيْدِيَهُنَّ وَقُلْنَ حَٰشَ لِلَّهِ
مَا هَٰذَا بَشَرًا إِنْ هَٰذَآ إِلَّا مَلَكٌ كَرِيمٌ ٣١

---

32. ಅವಳು ಹೇಳಿದಳು: "ಯಾರ ವಿಷಯದಲ್ಲಿ ನೀವು ನನ್ನ ಬಗ್ಗೆ

قَالَتْ فَذَٰلِكُنَّ ٱلَّذِي لُمْتُنَّنِي فِيهِ ۖ وَلَقَدْ

ಕೀಳಾಗಿ ಮಾತನಾಡುತ್ತಿದ್ದಿರೋ ಅವನೇ ಈತ! ನಾನು ಅವನನ್ನು ಪುಸಲಾಯಿಸಿದ್ದೆ. ಆದರೆ ಆತ ಅದಕ್ಕೆ ಒಪ್ಪದೆ ಪಾರಾಗಿಬಿಟ್ಟ. ನಾನು ಅವನಿಗೆ ಆಜ್ಞಾಪಿಸುವುದನ್ನು ಅವನು ನೆರವೇರಿಸದಿದ್ದರೆ, ಅವನನ್ನು ಕಾರಾಗೃಹಕ್ಕೆ ತಳ್ಳಲಾಗುವುದು ಮತ್ತು ಅವನು ಅವಮಾನಕ್ಕೊಳಗಾದವರಲ್ಲಿ ಸೇರುವನು.”

رَٰوَدتُّهُۥ عَن نَّفۡسِهِۦ فَٱسۡتَعۡصَمَۖ وَلَئِن
لَّمۡ يَفۡعَلۡ مَآ ءَامُرُهُۥ لَيُسۡجَنَنَّ وَلَيَكُونٗا
مِّنَ ٱلصَّٰغِرِينَ ٣٢

---

33. ಯೂಸುಫ್ ಹೇಳಿದರು: “ಓ ನನ್ನ ಪರಿಪಾಲಕನೇ! ಇವರು ನನ್ನನ್ನು ಯಾವುದರ ಕಡೆಗೆ ಕರೆಯುತ್ತಿದ್ದಾರೋ ಅದಕ್ಕಿಂತಲೂ ನನಗೆ ಕಾರಾಗೃಹವೇ ಹೆಚ್ಚು ಇಷ್ಟ. ನೀನು ನನ್ನನ್ನು ಇವರ ಪಿತೂರಿಯಿಂದ ದೂರ ಸರಿಸದಿದ್ದರೆ ನಾನು ಅವರ ಕಡೆಗೆ ವಾಲುವೆನು ಮತ್ತು ಅವಿವೇಕಿಗಳಲ್ಲಿ ಸೇರಿದವನಾಗುವೆನು.”

قَالَ رَبِّ ٱلسِّجۡنُ أَحَبُّ إِلَيَّ مِمَّا يَدۡعُونَنِيٓ
إِلَيۡهِۖ وَإِلَّا تَصۡرِفۡ عَنِّي كَيۡدَهُنَّ أَصۡبُ إِلَيۡهِنَّ
وَأَكُن مِّنَ ٱلۡجَٰهِلِينَ ٣٣

---

34. ಆಗ ಅವರ ಪರಿಪಾಲಕನು (ಅಲ್ಲಾಹು) ಅವರ ಪ್ರಾರ್ಥನೆಗೆ ಉತ್ತರಿಸಿದನು ಮತ್ತು ಆ ಮಹಿಳೆಯರ ಪಿತೂರಿಯಿಂದ ಅವರನ್ನು ದೂರ ಸರಿಸಿದನು. ನಿಶ್ಚಯವಾಗಿಯೂ ಅವನು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

فَٱسۡتَجَابَ لَهُۥ رَبُّهُۥ فَصَرَفَ عَنۡهُ كَيۡدَهُنَّۚ
إِنَّهُۥ هُوَ ٱلسَّمِيعُ ٱلۡعَلِيمُ ٣٤

---

35. ನಂತರ ಆ ಎಲ್ಲಾ ಸಾಕ್ಷ್ಯಾಧಾರಗಳನ್ನು ನೋಡಿದ ಬಳಿಕವೂ ಯೂಸುಫರನ್ನು ಒಂದು ಅವಧಿಯ ತನಕ ಕಾರಾಗೃಹದಲ್ಲಿಡುವುದು ಲೇಸೆಂದು ಅವರಿಗೆ ತೋಚಿತು.[1]

ثُمَّ بَدَا لَهُم مِّنۢ بَعۡدِ مَا رَأَوُاْ ٱلۡأٓيَٰتِ
لَيَسۡجُنُنَّهُۥ حَتَّىٰ حِينٖ ٣٥

---

36. ಯೂಸುಫರೊಂದಿಗೆ ಇಬ್ಬರು ಯುವಕರು ಕೂಡ ಕಾರಾಗೃಹಕ್ಕೆ ಪ್ರವೇಶ ಮಾಡಿದರು. ಅವರಲ್ಲೊಬ್ಬನು ಹೇಳಿದನು: “ನಾನು ಮದ್ಯ (ದ್ರಾಕ್ಷಾರಸ) ಹಿಂಡುತ್ತಿರುವಂತೆ ನನಗೆ ಕನಸು ಬಿದ್ದಿದೆ.” ಇನ್ನೊಬ್ಬನು ಹೇಳಿದನು: “ನಾನು ನನ್ನ ತಲೆಯ ಮೇಲೆ ರೊಟ್ಟಿಯನ್ನು ಒಯ್ಯುತ್ತಿರುವಂತೆ ನನಗೆ ಕನಸು ಬಿದ್ದಿದೆ. ಹಕ್ಕಿಗಳು ಅದನ್ನು ಕುಕ್ಕಿ ತಿನ್ನುತ್ತಿದ್ದವು. ಇದರ ಅರ್ಥವೇನೆಂದು ನಮಗೆ ತಿಳಿಸಿಕೊಡಿ. ನಿಶ್ಚಯವಾಗಿಯೂ ನಾವು ನಿಮ್ಮನ್ನು ಸಜ್ಜನರಂತೆ ಕಾಣುತ್ತಿದ್ದೇವೆ.”

وَدَخَلَ مَعَهُ ٱلسِّجۡنَ فَتَيَانِۖ قَالَ أَحَدُهُمَآ إِنِّيٓ
أَرَىٰنِيٓ أَعۡصِرُ خَمۡرٗاۖ وَقَالَ ٱلۡأٓخَرُ إِنِّيٓ أَرَىٰنِيٓ
أَحۡمِلُ فَوۡقَ رَأۡسِي خُبۡزٗا تَأۡكُلُ ٱلطَّيۡرُ مِنۡهُۖ
نَبِّئۡنَا بِتَأۡوِيلِهِۦٓۖ إِنَّا نَرَىٰكَ مِنَ ٱلۡمُحۡسِنِينَ ٣٦

---

37. ಯೂಸುಫ್ ಹೇಳಿದರು: “ನಿಮಗೆ ಒದಗಿಸಲಾಗುವ ಆಹಾರವು ನಿಮ್ಮ ಬಳಿಗೆ ಬರುವ ಮೊದಲೇ ನಾನು ಅದರ (ಕನಸಿನ) ವ್ಯಾಖ್ಯಾನವನ್ನು ನಿಮಗೆ ತಿಳಿಸಿಕೊಡುವೆನು. ನಾನು ಹೇಳುವ ವ್ಯಾಖ್ಯಾನವು ನನ್ನ ಪರಿಪಾಲಕನು (ಅಲ್ಲಾಹು) ನನಗೆ ಕಲಿಸಿಕೊಟ್ಟ

قَالَ لَا يَأۡتِيكُمَا طَعَامٞ تُرۡزَقَانِهِۦٓ إِلَّا نَبَّأۡتُكُمَا
بِتَأۡوِيلِهِۦ قَبۡلَ أَن يَأۡتِيَكُمَاۚ ذَٰلِكُمَا مِمَّا عَلَّمَنِي
رَبِّيٓۚ إِنِّي تَرَكۡتُ مِلَّةَ قَوۡمٖ لَّا يُؤۡمِنُونَ بِٱللَّهِ وَهُم

---

[1] ಯೂಸುಫರ (ಅವರ ಮೇಲೆ ಶಾಂತಿಯಿರಲಿ) ನಿರಪರಾಧಿತ್ವವು ಸಾಬೀತಾದ ಬಳಿಕವೂ ಅವರನ್ನು ಒಂದು ಅವಧಿಯ ತನಕ ಸೆರೆಯಲ್ಲಿಡುವುದು ಲೇಸೆಂದು ಆಕೆಯ ಗಂಡನಿಗೆ (ಮಂತ್ರಿಗೆ) ತೋರಿತು. ಬಹುಶಃ ಇದು ಯೂಸುಫರನ್ನು (ಅವರ ಮೇಲೆ ಶಾಂತಿಯಿರಲಿ) ತನ್ನ ಹೆಂಡತಿಯಿಂದ ದೂರವಿಡುವ ಉದ್ದೇಶದಿಂದಾಗಿರಬಹುದು.

ವಿಷಯಗಳಲ್ಲಿ ಸೇರಿದ್ದಾಗಿದೆ. ಅಲ್ಲಾಹನಲ್ಲಿ ವಿಶ್ವಾಸವಿಡದ ಮತ್ತು ಪರಲೋಕವನ್ನು ನಿಷೇಧಿಸುವ ಜನರ ಮಾರ್ಗವನ್ನು ನಿಶ್ಚಯವಾಗಿಯೂ ನಾನು ತೊರೆದಿದ್ದೇನೆ.

بِٱلۡأٓخِرَةِ هُمۡ كَٰفِرُونَ ٣٧

---

38. ನಾನು ನನ್ನ ಪೂರ್ವ ಪಿತಾಮಹರಾದ ಇಬ್ರಾಹೀಮ್, ಇಸ್‌ಹಾಕ್ ಮತ್ತು ಯಾಕೂಬರ ಮಾರ್ಗವನ್ನು ಹಿಂಬಾಲಿಸಿದ್ದೇನೆ. ಅಲ್ಲಾಹನೊಂದಿಗೆ ಸಹಭಾಗಿತ್ವ (ಶಿರ್ಕ್) ಮಾಡುವುದು ನಮಗೆ ಅರ್ಹವಾದುದಲ್ಲ. ಇದು ನಮ್ಮ ಮತ್ತು ಸಂಪೂರ್ಣ ಮಾನವರ ಮೇಲಿರುವ ಅಲ್ಲಾಹನ ವಿಶೇಷ ಅನುಗ್ರಹವಾಗಿದೆ. ಆದರೆ ಜನರಲ್ಲಿ ಹೆಚ್ಚಿನವರು ಕೃತಜ್ಞರಾಗುವುದಿಲ್ಲ.

وَٱتَّبَعۡتُ مِلَّةَ ءَابَآءِيٓ إِبۡرَٰهِيمَ وَإِسۡحَٰقَ وَيَعۡقُوبَۚ مَا كَانَ لَنَآ أَن نُّشۡرِكَ بِٱللَّهِ مِن شَيۡءٖۚ ذَٰلِكَ مِن فَضۡلِ ٱللَّهِ عَلَيۡنَا وَعَلَى ٱلنَّاسِ وَلَٰكِنَّ أَكۡثَرَ ٱلنَّاسِ لَا يَشۡكُرُونَ ٣٨

---

39. ಓ ನನ್ನ ಕಾರಾಗೃಹದ ಗೆಳೆಯರೇ! ಅನೇಕ ವಿಭಿನ್ನ ದೇವರುಗಳು ಉತ್ತಮವೋ, ಅಥವಾ ಮಹಾ ಶಕ್ತಿಶಾಲಿಯಾದ ಏಕೈಕ ಅಲ್ಲಾಹನೋ?

يَٰصَٰحِبَيِ ٱلسِّجۡنِ ءَأَرۡبَابٞ مُّتَفَرِّقُونَ خَيۡرٌ أَمِ ٱللَّهُ ٱلۡوَٰحِدُ ٱلۡقَهَّارُ ٣٩

---

40. ನೀವು ಅಲ್ಲಾಹನನ್ನು ಬಿಟ್ಟು ಯಾವೆಲ್ಲಾ ದೇವರುಗಳನ್ನು ಆರಾಧಿಸುತ್ತಿದ್ದೀರೋ ಅವರು ಕೇವಲ ನೀವು ಮತ್ತು ನಿಮ್ಮ ಪೂರ್ವಜರು ನಾಮಕರಣ ಮಾಡಿದ ಕೆಲವು ಹೆಸರುಗಳಲ್ಲದೆ ಇನ್ನೇನೂ ಅಲ್ಲ. ಅಲ್ಲಾಹು ಅವರ ಬಗ್ಗೆ ಯಾವುದೇ ಸಾಕ್ಷ್ಯಾಧಾರವನ್ನು ಅವತೀರ್ಣಗೊಳಿಸಿಲ್ಲ. ಆಜ್ಞಾಧಿಕಾರವಿರುವುದು ಅಲ್ಲಾಹನಿಗೆ ಮಾತ್ರ. ನೀವು ಅವನನ್ನು ಬಿಟ್ಟು ಬೇರೆ ಯಾರನ್ನೂ ಆರಾಧಿಸಬಾರದೆಂದು ಅವನು ಆಜ್ಞಾಪಿಸಿದ್ದಾನೆ. ಅದೇ ನೇರ ಧರ್ಮ. ಆದರೆ ಜನರಲ್ಲಿ ಹೆಚ್ಚಿನವರು ತಿಳಿಯುವುದಿಲ್ಲ.

مَا تَعۡبُدُونَ مِن دُونِهِۦٓ إِلَّآ أَسۡمَآءٗ سَمَّيۡتُمُوهَآ أَنتُمۡ وَءَابَآؤُكُم مَّآ أَنزَلَ ٱللَّهُ بِهَا مِن سُلۡطَٰنٍۚ إِنِ ٱلۡحُكۡمُ إِلَّا لِلَّهِ أَمَرَ أَلَّا تَعۡبُدُوٓاْ إِلَّآ إِيَّاهُۚ ذَٰلِكَ ٱلدِّينُ ٱلۡقَيِّمُ وَلَٰكِنَّ أَكۡثَرَ ٱلنَّاسِ لَا يَعۡلَمُونَ ٤٠

---

41. ಓ ನನ್ನ ಕಾರಾಗೃಹದ ಗೆಳೆಯರೇ! ನಿಮ್ಮಲ್ಲೊಬ್ಬನು ತನ್ನ ಅರಸನಿಗೆ ಮದ್ಯವನ್ನು ಕುಡಿಸುವನು.[1] ಇನ್ನೊಬ್ಬನನ್ನು ಶಿಲುಬೆಗೇರಿಸಲಾಗುವುದು. ಆಗ ಹಕ್ಕಿಗಳು ಅವನ ತಲೆಯನ್ನು ಕುಕ್ಕಿ ತಿನ್ನುವುವು. ನೀವಿಬ್ಬರು ತೀರ್ಪು ಕೇಳುವ ಆ ವಿಷಯವು ಈಗಾಗಲೇ ತೀರ್ಮಾನಿಸಲ್ಪಟ್ಟಿದೆ."

يَٰصَٰحِبَيِ ٱلسِّجۡنِ أَمَّآ أَحَدُكُمَا فَيَسۡقِي رَبَّهُۥ خَمۡرٗاۖ وَأَمَّا ٱلۡأٓخَرُ فَيُصۡلَبُ فَتَأۡكُلُ ٱلطَّيۡرُ مِن رَّأۡسِهِۦۚ قُضِيَ ٱلۡأَمۡرُ ٱلَّذِي فِيهِ تَسۡتَفۡتِيَانِ ٤١

---

42. ಅವರಿಬ್ಬರಲ್ಲಿ ಬಿಡುಗಡೆಯಾಗುವನೆಂಬ ಗುಮಾನಿಯಿದ್ದ ವ್ಯಕ್ತಿಯೊಡನೆ ಅವರು ಹೇಳಿದರು: "ನಿನ್ನ ಅರಸನಿಗೆ ನನ್ನ ಬಗ್ಗೆ ನೆನಪು ಮಾಡು." ಆದರೆ ಅವನ ಅರಸನ ಬಳಿ ಯೂಸುಫರ ಬಗ್ಗೆ ನೆನಪು ಮಾಡುವುದನ್ನು ಶೈತಾನನು ಮರೆಸಿ ಬಿಟ್ಟನು. ಆದ್ದರಿಂದ ಅವರು ಅನೇಕ ವರ್ಷಗಳ ಕಾಲ ಕಾರಾಗೃಹದಲ್ಲೇ ಉಳಿದರು.

وَقَالَ لِلَّذِي ظَنَّ أَنَّهُۥ نَاجٖ مِّنۡهُمَا ٱذۡكُرۡنِي عِندَ رَبِّكَ فَأَنسَىٰهُ ٱلشَّيۡطَٰنُ ذِكۡرَ رَبِّهِۦ فَلَبِثَ فِي ٱلسِّجۡنِ بِضۡعَ سِنِينَ ٤٢

---

[1] ಅಂದರೆ ಅವನು ಸೆರೆಮನೆಯಿಂದ ಬಿಡುಗಡೆಯಾದ ನಂತರ ಅರಸನಿಗೆ ಮದ್ಯ ಬಡಿಸುವ ಕೆಲಸಕ್ಕೆ ಸೇರಿಕೊಳ್ಳುವನು.

**43.** ಅರಸ ಹೇಳಿದನು: "ಏಳು ಕೊಬ್ಬಿದ ಹಸುಗಳನ್ನು ಏಳು ಬಡಕಲು ಹಸುಗಳು ತಿನ್ನುವುದನ್ನು ಮತ್ತು ಏಳು ಹಸಿರು ತೆನೆಗಳು ಹಾಗೂ ಏಳು ಒಣ ತೆನೆಗಳನ್ನು ನಾನು (ಕನಸಿನಲ್ಲಿ) ಕಂಡಿದ್ದೇನೆ. ಓ ಸರದಾರರೇ! ನನ್ನ ಈ ಕನಸಿನ ಅರ್ಥವೇನೆಂದು ತಿಳಿಸಿಕೊಡಿ. ನೀವು ಕನಸುಗಳ ವ್ಯಾಖ್ಯಾನವನ್ನು ತಿಳಿದವರಾಗಿದ್ದರೆ."

وَقَالَ ٱلْمَلِكُ إِنِّىٓ أَرَىٰ سَبْعَ بَقَرَٰتٍ سِمَانٍ
يَأْكُلُهُنَّ سَبْعٌ عِجَافٌ وَسَبْعَ سُنۢبُلَٰتٍ خُضْرٍ
وَأُخَرَ يَابِسَٰتٍ ۖ يَٰٓأَيُّهَا ٱلْمَلَأُ أَفْتُونِى فِى رُءْيَٰىَ
إِن كُنتُمْ لِلرُّءْيَا تَعْبُرُونَ ﴿٤٣﴾

---

**44.** ಅವರು ಹೇಳಿದರು: "ಅರ್ಥರಹಿತ ಕನಸುಗಳ ಮಿಶ್ರಣ! ನಮಗೆ ಇಂತಹ ಅರ್ಥರಹಿತ ಕನಸುಗಳ ವ್ಯಾಖ್ಯಾನವು ತಿಳಿದಿಲ್ಲ."

قَالُوٓا۟ أَضْغَٰثُ أَحْلَٰمٍ ۖ وَمَا نَحْنُ بِتَأْوِيلِ ٱلْأَحْلَٰمِ
بِعَٰلِمِينَ ﴿٤٤﴾

---

**45.** ಅವರಿಬ್ಬರಲ್ಲಿ ಬಿಡುಗಡೆಯಾದವನಿಗೆ ಒಂದು ದೀರ್ಘವಧಿಯ ನಂತರ (ಯೂಸುಫರ ಬಗ್ಗೆ) ಜ್ಞಾಪಕ ಬಂದು ಹೇಳಿದನು: "ಅದರ ವ್ಯಾಖ್ಯಾನವನ್ನು ನಾನು ನಿಮಗೆ ತಿಳಿಸಿಕೊಡುತ್ತೇನೆ. ನನ್ನನ್ನು ಕಳುಹಿಸಿಕೊಡಿ."

وَقَالَ ٱلَّذِى نَجَا مِنْهُمَا وَٱدَّكَرَ بَعْدَ أُمَّةٍ أَنَا۠
أُنَبِّئُكُم بِتَأْوِيلِهِۦ فَأَرْسِلُونِ ﴿٤٥﴾

---

**46.** (ಅವನು ಯೂಸುಫರ ಬಳಿಗೆ ಹೋಗಿ ಹೇಳಿದನು): "ಓ ಸತ್ಯವಂತ ಯೂಸುಫರೇ! ಏಳು ಕೊಬ್ಬಿದ ಹಸುಗಳನ್ನು ಏಳು ಬಡಕಲು ಹಸುಗಳು ತಿನ್ನುವುದು ಮತ್ತು ಏಳು ಹಸಿರು ತೆನೆಗಳು ಹಾಗೂ ಏಳು ಒಣ ತೆನೆಗಳ ವ್ಯಾಖ್ಯಾನವನ್ನು ತಿಳಿಸಿ. ನಾನು ಮರಳಿ ಹೋಗಿ ಆ ಜನರಿಗೆ ಹೇಳುತ್ತೇನೆ. ಅವರು (ನಿಮ್ಮ ಬಗ್ಗೆ) ತಿಳಿಯುವಂತಾಗಲಿ."

يُوسُفُ أَيُّهَا ٱلصِّدِّيقُ أَفْتِنَا فِى سَبْعِ بَقَرَٰتٍ
سِمَانٍ يَأْكُلُهُنَّ سَبْعٌ عِجَافٌ وَسَبْعِ سُنۢبُلَٰتٍ
خُضْرٍ وَأُخَرَ يَابِسَٰتٍ لَّعَلِّىٓ أَرْجِعُ إِلَى ٱلنَّاسِ
لَعَلَّهُمْ يَعْلَمُونَ ﴿٤٦﴾

---

**47.** ಯೂಸುಫ್ ಹೇಳಿದರು: "ನೀವು ಸತತ ಏಳು ವರ್ಷಗಳ ಕಾಲ ನಿರಂತರ ಬಿತ್ತನೆ ಮಾಡಿರಿ. ನಂತರ ನೀವು ಕೊಯ್ಲು ಮಾಡಿದ್ದನ್ನು—ನಿಮಗೆ ತಿನ್ನಲು ಬೇಕಾದ ಸ್ವಲ್ಪಾಂಶದ ಬಿಟ್ಟು—ಉಳಿದುದನ್ನು ತೆನೆಯಲ್ಲೇ ಬಿಟ್ಟುಬಿಡಿ.

قَالَ تَزْرَعُونَ سَبْعَ سِنِينَ دَأَبًا فَمَا
حَصَدتُّمْ فَذَرُوهُ فِى سُنۢبُلِهِۦٓ إِلَّا قَلِيلًا مِّمَّا
تَأْكُلُونَ ﴿٤٧﴾

---

**48.** ಅದರ ನಂತರ ತೀವ್ರ ಬರಗಾಲದ ಏಳು ವರ್ಷಗಳು ಬಂದು, ನೀವು ಆ ವರ್ಷಗಳಿಗಾಗಿ ದಾಸ್ತಾನು ಮಾಡಿದ ಧಾನ್ಯಗಳೆಲ್ಲ-ವನ್ನೂ ಅವು ತಿನ್ನುತ್ತವೆ. ನೀವು ಜೋಪಾನವಾಗಿಟ್ಟ ಸ್ವಲ್ಪಾಂಶದ ಹೊರತು.[1]

ثُمَّ يَأْتِى مِنۢ بَعْدِ ذَٰلِكَ سَبْعٌ شِدَادٌ يَأْكُلْنَ مَا
قَدَّمْتُمْ لَهُنَّ إِلَّا قَلِيلًا مِّمَّا تُحْصِنُونَ ﴿٤٨﴾

---

**49.** ಅದರ ನಂತರ ಬರುವ ವರ್ಷದಲ್ಲಿ ಜನರಿಗೆ ಯಥೇಷ್ಟ ಮಳೆಯಾಗುತ್ತದೆ. ಆ ವರ್ಷದಲ್ಲಿ ಅವರು

ثُمَّ يَأْتِى مِنۢ بَعْدِ ذَٰلِكَ عَامٌ فِيهِ يُغَاثُ ٱلنَّاسُ
وَفِيهِ يَعْصِرُونَ ﴿٤٩﴾

---

[1] ಏಳು ಕೊಬ್ಬಿದ ಹಸುಗಳು ಎಂದರೆ ಸಮೃದ್ಧವಾದ ಏಳು ವರ್ಷಗಳು. ಏಳು ಬಡಕಲು ಹಸುಗಳು ಎಂದರೆ ಅದರ ನಂತರ ಬರುವ ಏಳು ಬರಗಾಲದ ವರ್ಷಗಳು. ಏಳು ಹಸಿರು ಪೈರುಗಳು ಎಂದರೆ ಭೂಮಿ ಫಲವತ್ತಾಗಿರುವ ಏಳು ವರ್ಷಗಳು ಮತ್ತು ಏಳು ಒಣಗಿದ ಪೈರುಗಳು ಎಂದರೆ ಭೂಮಿ ಬರಡಾಗಿರುವ ಏಳು ವರ್ಷಗಳು. ಭೂಮಿ ಫಲವತ್ತಾಗಿರುವ ಏಳು ಸಮೃದ್ಧಪೂರ್ಣ ವರ್ಷಗಳಲ್ಲಿ ಸತತವಾಗಿ ಕೃಷಿ ಮಾಡಿ, ತಿನ್ನಲು ಬೇಕಾದಷ್ಟು ಧಾನ್ಯಗಳನ್ನು ತೆಗೆದು ಉಳಿದವುಗಳನ್ನು ಅವುಗಳ ತೆನೆಗಳೊಂದಿಗೇ ದಾಸ್ತಾನು ಮಾಡಿಟ್ಟುಕೊಳ್ಳಬೇಕು. ಮುಂದೆ ಬರುವ ಏಳು ಬರಗಾಲದ ವರ್ಷಗಳಲ್ಲಿ ಇವು ಉಪಯೋಗಕ್ಕೆ ಬರುತ್ತವೆ.

(ದ್ರಾಕ್ಷಾರಸವನ್ನು) ಹಿಂಡುವರು."

50. ಅರಸ ಹೇಳಿದನು: "ಅವನನ್ನು ನನ್ನ ಬಳಿಗೆ ಕರೆತನ್ನಿ." ಯೂಸುಫರ ಬಳಿಗೆ ದೂತನು ಬಂದಾಗ ಅವರು ಹೇಳಿದರು: "ನಿನ್ನ ಅರಸನ ಬಳಿಗೆ ಮರಳಿ ಹೋಗಿ ಕೈಗಳನ್ನು ಕೊಯ್ದ ಆ ಮಹಿಳೆಯರಿಗೆ ಏನಾಯಿತೆಂದು ವಿಚಾರಿಸು. ನಿಶ್ಚಯವಾಗಿಯೂ ನನ್ನ ಪರಿಪಾಲಕನು (ಅಲ್ಲಾಹು) ಅವರ ಪಿತೂರಿಯ ಬಗ್ಗೆ ಬಹಳ ಚೆನ್ನಾಗಿ ತಿಳಿದಿದ್ದಾನೆ."

وَقَالَ ٱلۡمَلِكُ ٱئۡتُونِي بِهِۦۖ فَلَمَّا جَآءَهُ ٱلرَّسُولُ قَالَ ٱرۡجِعۡ إِلَىٰ رَبِّكَ فَسۡـَٔلۡهُ مَا بَالُ ٱلنِّسۡوَةِ ٱلَّٰتِي قَطَّعۡنَ أَيۡدِيَهُنَّۚ إِنَّ رَبِّي بِكَيۡدِهِنَّ عَلِيمٞ ٥٠

51. ಅರಸ ಕೇಳಿದನು: "ನೀವು ಯೂಸುಫರನ್ನು ಪುಸಲಾಯಿಸಿದ ಆ ಘಟನೆಯ ನಿಜಸ್ಥಿತಿಯೇನು?" ಆ ಮಹಿಳೆಯರು ಹೇಳಿದರು: "ಅಲ್ಲಾಹು ಕಾಪಾಡಲಿ! ಯೂಸುಫರಲ್ಲಿ ಏನಾದರೂ ದುರ್ನಡ-ತೆಯಿರುವುದು ನಮ್ಮ ಗಮನಕ್ಕೆ ಬಂದಿಲ್ಲ." ಅಝೀಝಿನ ಹೆಂಡತಿ ಹೇಳಿದಳು: "ಈಗ ಸತ್ಯವು ಬೆಳಕಿಗೆ ಬಂದಿದೆ. ನಾನೇ ಅವರನ್ನು ಪುಸಲಾಯಿಸಿದ್ದೆ. ಅವರು ನಿಜವಾಗಿಯೂ ಸತ್ಯವಂತರಾಗಿದ್ದಾರೆ.

قَالَ مَا خَطۡبُكُنَّ إِذۡ رَٰوَدتُّنَّ يُوسُفَ عَن نَّفۡسِهِۦۚ قُلۡنَ حَٰشَ لِلَّهِ مَا عَلِمۡنَا عَلَيۡهِ مِن سُوٓءٖۚ قَالَتِ ٱمۡرَأَتُ ٱلۡعَزِيزِ ٱلۡـَٰٔنَ حَصۡحَصَ ٱلۡحَقُّ أَنَا۠ رَٰوَدتُّهُۥ عَن نَّفۡسِهِۦ وَإِنَّهُۥ لَمِنَ ٱلصَّٰدِقِينَ ٥١

52. ಇದೇಕೆಂದರೆ ನಾನು ಅವನ (ಗಂಡನ) ಅನುಪಸ್ಥಿತಿ-ಯಲ್ಲಿ ಅವನಿಗೆ ವಿಶ್ವಾಸದ್ರೋಹ ಮಾಡಿಲ್ಲ ಎಂದು ಅವನು ತಿಳಿಯಲೆಂದು ಮತ್ತು ವಿಶ್ವಾಸದ್ರೋಹಿಗಳ ಪಿತೂರಿಯನ್ನು ಅಲ್ಲಾಹು ಯಶಸ್ವಿಗೊಳಿಸುವುದಿಲ್ಲ ಎಂದು ತಿಳಿಯಲೆಂದಾಗಿದೆ.

ذَٰلِكَ لِيَعۡلَمَ أَنِّي لَمۡ أَخُنۡهُ بِٱلۡغَيۡبِ وَأَنَّ ٱللَّهَ لَا يَهۡدِي كَيۡدَ ٱلۡخَآئِنِينَ ٥٢

53. ನನ್ನ ಮನಸ್ಸು ಪರಿಶುದ್ಧವಾಗಿದೆಯೆಂದು ನಾನು ಹೇಳುವುದಿಲ್ಲ. ನಿಶ್ಚಯವಾಗಿಯೂ ಮನಸ್ಸು ಕೆಡುಕು ಮಾಡಲು ಉತ್ತೇಜಿಸುತ್ತಲೇ ಇರುತ್ತದೆ. ನನ್ನ ಪರಿಪಾಲಕನು (ಅಲ್ಲಾಹು) ದಯೆ ತೋರಿದವರ ಹೊರತು. ನಿಶ್ಚಯವಾಗಿಯೂ ನನ್ನ ಪರಿಪಾಲಕನು (ಅಲ್ಲಾಹು) ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ."

وَمَآ أُبَرِّئُ نَفۡسِيٓۚ إِنَّ ٱلنَّفۡسَ لَأَمَّارَةُۢ بِٱلسُّوٓءِ إِلَّا مَا رَحِمَ رَبِّيٓۚ إِنَّ رَبِّي غَفُورٞ رَّحِيمٞ ٥٣

54. ಅರಸ ಹೇಳಿದನು: "ಅವರನ್ನು ನನ್ನ ಬಳಿಗೆ ತನ್ನಿ. ನಾನು ಅವರನ್ನು ನನ್ನ ಆಪ್ತ ಸಲಹೆಗಾರನಾಗಿ ನೇಮಿಸುತ್ತೇನೆ." ನಂತರ ಅವರೊಡನೆ ಮಾತನಾಡಿದಾಗ ಅರಸ ಹೇಳಿದನು: "ನೀವು ಇಂದಿನಿಂದ ನಮ್ಮ ಬಳಿ ಗೌರವಾನ್ವಿತ ಮತ್ತು ವಿಶ್ವಾಸಾರ್ಹ ವ್ಯಕ್ತಿಯಾಗಿದ್ದೀರಿ."

وَقَالَ ٱلۡمَلِكُ ٱئۡتُونِي بِهِۦٓ أَسۡتَخۡلِصۡهُ لِنَفۡسِيۖ فَلَمَّا كَلَّمَهُۥ قَالَ إِنَّكَ ٱلۡيَوۡمَ لَدَيۡنَا مَكِينٌ أَمِينٞ ٥٤

55. ಯೂಸುಫ್ ಹೇಳಿದರು: "ನನ್ನನ್ನು ರಾಜ್ಯದ ಬೊಕ್ಕಸಗಳ ಅಧಿಕಾರಿಯನ್ನಾಗಿ ನೇಮಿಸಿ. ನಾನು ರಕ್ಷಣೆ ಮಾಡುವವನು ಮತ್ತು ತಿಳುವಳಿಕೆಯುಳ್ಳವನಾಗಿದ್ದೇನೆ."

قَالَ ٱجۡعَلۡنِي عَلَىٰ خَزَآئِنِ ٱلۡأَرۡضِۖ إِنِّي حَفِيظٌ عَلِيمٞ ٥٥

56. ಈ ರೀತಿ ನಾವು ಯೂಸುಫರಿಗೆ ಆ ರಾಜ್ಯದಲ್ಲಿ ಅಧಿಕಾರವನ್ನು

وَكَذَٰلِكَ مَكَّنَّا لِيُوسُفَ فِي ٱلۡأَرۡضِ يَتَبَوَّأُ مِنۡهَا

حَيۡثُ يَشَآءُۚ نُصِيبُ بِرَحۡمَتِنَا مَن نَّشَآءُۖ وَلَا نُضِيعُ أَجۡرَ ٱلۡمُحۡسِنِينَ ٥٦

ನೀಡಿದೆವು—ಅಲ್ಲಿ ಅವರಿಗೆ ಇಷ್ಟ ಬಂದ ಕಡೆ ಅವರು ವಾಸಿಸಲಿ ಎಂದು. ನಾವು ಇಚ್ಛಿಸುವವರಿಗೆ ನಾವು ನಮ್ಮ ದಯೆಯನ್ನು ದಯಪಾಲಿಸುತ್ತೇವೆ. ಒಳಿತು ಮಾಡುವವರ ಪ್ರತಿಫಲವನ್ನು ನಾವು ವ್ಯರ್ಥಗೊಳಿಸುವುದಿಲ್ಲ.

وَلَأَجۡرُ ٱلۡأٓخِرَةِ خَيۡرٞ لِّلَّذِينَ ءَامَنُواْ وَكَانُواْ يَتَّقُونَ ٥٧

57. ಸತ್ಯವಿಶ್ವಾಸಿಗಳಿಗೆ ಮತ್ತು ದೇವಭಯವುಳ್ಳವರಿಗೆ ಪರಲೋಕದ ಪ್ರತಿಫಲವೇ ಅತಿಶ್ರೇಷ್ಠವಾಗಿದೆ.

وَجَآءَ إِخۡوَةُ يُوسُفَ فَدَخَلُواْ عَلَيۡهِ فَعَرَفَهُمۡ وَهُمۡ لَهُۥ مُنكِرُونَ ٥٨

58. ಯೂಸುಫರ ಸಹೋದರರು (ಈಜಿಪ್ಟಿಗೆ) ಬಂದರು.[1] ಅವರು ಯೂಸುಫರ ಬಳಿಗೆ ತೆರಳಿದಾಗ, ಯೂಸುಫ್ ಅವರನ್ನು ಗುರುತಿಸಿದರು. ಆದರೆ ಅವರಿಗೆ ಯೂಸುಫರನ್ನು ಗುರುತಿಸಲಾಗಲಿಲ್ಲ.

وَلَمَّا جَهَّزَهُم بِجَهَازِهِمۡ قَالَ ٱئۡتُونِي بِأَخٖ لَّكُم مِّنۡ أَبِيكُمۡۚ أَلَا تَرَوۡنَ أَنِّيٓ أُوفِي ٱلۡكَيۡلَ وَأَنَا۠ خَيۡرُ ٱلۡمُنزِلِينَ ٥٩

59. ಅವರಿಗೆ ಬೇಕಾದ ಆಹಾರ ಸಾಮಗ್ರಿಗಳನ್ನು ಸಜ್ಜುಗೊಳಿಸಿದಾಗ ಯೂಸುಫ್ ಹೇಳಿದರು: “ನಿಮ್ಮ ತಂದೆಯ ಕಡೆಯ ನಿಮ್ಮ ತಮ್ಮನನ್ನು ಕರೆದುಕೊಂಡು ಬನ್ನಿ. ನಾನು (ಧಾನ್ಯಗಳನ್ನು) ಪೂರ್ಣವಾಗಿ ಅಳೆದು ಕೊಡುವುದನ್ನು ಮತ್ತು ನಾನು ಆತಿಥ್ಯ ನೀಡುವವರಲ್ಲಿ ಅತ್ಯುತ್ತಮನೆಂದು ನೀವು ನೋಡುತ್ತಿಲ್ಲವೇ?

فَإِن لَّمۡ تَأۡتُونِي بِهِۦ فَلَا كَيۡلَ لَكُمۡ عِندِي وَلَا تَقۡرَبُونِ ٦٠

60. ನೀವು ಅವನನ್ನು ಕರೆದುಕೊಂಡು ಬರದಿದ್ದರೆ, ನನ್ನಿಂದ ನಿಮಗೆ (ಇನ್ನು ಮುಂದೆ ಯಾವುದೇ ಧಾನ್ಯವನ್ನು) ಅಳೆದು ಕೊಡಲಾಗುವುದಿಲ್ಲ ಮತ್ತು ನೀವು ನನ್ನ ಬಳಿಗೆ ಬರಬೇಕಾಗಿಯೂ ಇಲ್ಲ.”[2]

قَالُواْ سَنُرَٰوِدُ عَنۡهُ أَبَاهُ وَإِنَّا لَفَٰعِلُونَ ٦١

61. ಅವರು ಹೇಳಿದರು: “ನಾನು ಅವನ ತಂದೆಯನ್ನು ಪುಸಲಾಯಿಸುವೆವು. ನಾವು ಅದನ್ನು ಖಂಡಿತ ಮಾಡುವೆವು.”

وَقَالَ لِفِتۡيَٰنِهِ ٱجۡعَلُواْ بِضَٰعَتَهُمۡ فِي رِحَالِهِمۡ

62. ಯೂಸುಫ್ ತಮ್ಮ ಆಳುಗಳೊಂದಿಗೆ ಹೇಳಿದರು: “ಅವರು (ಧಾನ್ಯ ಖರೀದಿಸಲು ತಂದ) ಸರಕುಗಳನ್ನು ಅವರ ಹಸುಬೆಗಳಲ್ಲೇ

---

[1] ಏಳು ಸಮೃದ್ಧಪೂರ್ಣ ವರ್ಷಗಳು ಕಳೆದ ಬಳಿಕ ಏಳು ಬರಗಾಲದ ವರ್ಷಗಳು ಬಂದವು. ಈ ವರ್ಷಗಳಲ್ಲಿ ಬರಗಾಲವು ಎಷ್ಟು ತೀವ್ರವಾಗಿತ್ತೆಂದರೆ ಈಜಿಪ್ಟ್ ದೇಶವು ಸಂಪೂರ್ಣವಾಗಿ ಬರ ಪೀಡಿತವಾಯಿತು. ಯಾಕೂಬ್ (ಅವರ ಮೇಲೆ ಶಾಂತಿಯಿರಲಿ) ಮತ್ತು ಅವರ ಮಕ್ಕಳು ವಾಸವಾಗಿದ್ದ ಕನ್‌ಆನ್ ದೇಶವು ಕೂಡ ಬರಗಾಲಕ್ಕೆ ತುತ್ತಾಯಿತು. ಯೂಸುಫ್ (ಅವರ ಮೇಲೆ ಶಾಂತಿಯಿರಲಿ) ಮೊದಲೇ ಯೋಜನೆಗಳನ್ನು ರಚಿಸಿ ಬರಗಾಲವನ್ನು ಅತ್ಯಂತ ನಾಜೂಕಾಗಿ ನಿರ್ವಹಿಸಿದರು. ಈಜಿಪ್ಟಿನಲ್ಲಿ ಧಾನ್ಯ ಸಿಗುತ್ತದೆಯೆಂಬ ಸುದ್ದಿ ತಿಳಿದಾಗ ಯಾಕೂಬ್ (ಅವರ ಮೇಲೆ ಶಾಂತಿಯಿರಲಿ) ತಮ್ಮ ಮಕ್ಕಳನ್ನು ಧಾನ್ಯ ಖರೀದಿಸಲು ಈಜಿಪ್ಟಿಗೆ ಕಳುಹಿಸಿದರು.

[2] ಯೂಸುಫ್ (ಅವರ ಮೇಲೆ ಶಾಂತಿಯಿರಲಿ) ತನ್ನ ಸಹೋದರರನ್ನು ಅತ್ಯುತ್ತಮವಾಗಿ ಸತ್ಕರಿಸಿದರು. ಅವರಿಗೆ ಬೇಕಾದ ಎಲ್ಲಾ ಆಹಾರ ಸಾಮಗ್ರಿಗಳನ್ನು ಒದಗಿಸಿದರು. ನಮಗೊಬ್ಬ ತಂದೆ ಮತ್ತು ಇಬ್ಬರು ತಮ್ಮಂದಿರಿದ್ದಾರೆ. ಒಬ್ಬ ತಮ್ಮ ಕಳೆದುಹೋಗಿದ್ದಾನೆ. ಇನ್ನೊಬ್ಬ ತಮ್ಮನನ್ನು ತಂದೆಯವರು ಎಲ್ಲಿಗೂ ಕಳಿಸುವುದಿಲ್ಲ. ಆದ್ದರಿಂದ ಅವನು ನಮ್ಮ ಜೊತೆಗೆ ಬಂದಿಲ್ಲವೆಂದು ಸಹೋದರರು ಹೇಳಿದರು. ಆಗ ಯೂಸುಫ್ (ಅವರ ಮೇಲೆ ಶಾಂತಿಯಿರಲಿ) ಮುಂದೆ ನೀವು ಇಲ್ಲಿಗೆ ಆಹಾರ ಸಾಮಗ್ರಿಗಳಿಗಾಗಿ ಬರುವಾಗ ತಮ್ಮನನ್ನೂ ಕರೆದುಕೊಂಡು ಬನ್ನಿ. ಇಲ್ಲದಿದ್ದರೆ ನಿಮಗೆ ನಾನು ಆಹಾರ ಸಾಮಗ್ರಿಗಳನ್ನು ಕೊಡುವುದಿಲ್ಲವೆಂದು ಹೇಳಿದರು.

| | |
|---|---|
| (ಗುಟ್ಟಾಗಿ) ಹಾಕಿಬಿಡಿ. ಅವರು ತಮ್ಮ ಮನೆಯವರ ಬಳಿಗೆ ಮರಳಿದಾಗ ಅವುಗಳನ್ನು ಗುರುತಿಸುವರು. ಇದರಿಂದ ಅವರು ಮರಳಿ ಬರುವ ಸಾಧ್ಯತೆ ಹೆಚ್ಚಿದೆ.” | لَعَلَّهُمْ يَعْرِفُونَهَآ إِذَا ٱنقَلَبُوٓاْ إِلَىٰٓ أَهْلِهِمْ لَعَلَّهُمْ يَرْجِعُونَ ﴿٦٢﴾ |
| 63. ಅವರು ತಮ್ಮ ತಂದೆಯ ಬಳಿಗೆ ಮರಳಿದಾಗ ಹೇಳಿದರು: “ಅಪ್ಪಾ! ನಮಗೆ (ಧಾನ್ಯಗಳನ್ನು) ಅಳೆದುಕೊಡುವುದನ್ನು ತಡೆಹಿಡಿಯಲಾಗಿದೆ. ಆದ್ದರಿಂದ ನಮ್ಮ ಜೊತೆಗೆ ನಮ್ಮ ತಮ್ಮನನ್ನು ಕಳುಹಿಸಿ. ನಾವು (ಧಾನ್ಯಗಳನ್ನು) ಪೂರ್ಣವಾಗಿ ಅಳೆದು ತರುವೆವು. ನಾವು ಇವನನ್ನು ಸುರಕ್ಷಿತವಾಗಿ ಕಾಪಾಡುವೆವು.” | فَلَمَّا رَجَعُوٓاْ إِلَىٰٓ أَبِيهِمْ قَالُواْ يَٰٓأَبَانَا مُنِعَ مِنَّا ٱلْكَيْلُ فَأَرْسِلْ مَعَنَآ أَخَانَا نَكْتَلْ وَإِنَّا لَهُۥ لَحَٰفِظُونَ ﴿٦٣﴾ |
| 64. ತಂದೆ ಹೇಳಿದರು: “ಇದಕ್ಕೆ ಮೊದಲು ಇವನ ಅಣ್ಣನ (ಯೂಸುಫನ) ವಿಷಯದಲ್ಲಿ ನಾನು ನಿಮ್ಮನ್ನು ನಂಬಿದಂತೆಯೇ ಹೊರತು ಇವನ ವಿಷಯದಲ್ಲಿ ನಿಮ್ಮನ್ನು ನಂಬಲಾದೀತೇ? ಅಲ್ಲಾಹನೇ ಅತ್ಯುತ್ತಮ ರಕ್ಷಕ. ಅವನು ದಯೆ ತೋರುವವರಲ್ಲೇ ಅತ್ಯಧಿಕ ದಯೆ ತೋರುವವನಾಗಿದ್ದಾನೆ.” | قَالَ هَلْ ءَامَنُكُمْ عَلَيْهِ إِلَّا كَمَآ أَمِنتُكُمْ عَلَىٰٓ أَخِيهِ مِن قَبْلُ فَٱللَّهُ خَيْرٌ حَٰفِظًاۖ وَهُوَ أَرْحَمُ ٱلرَّٰحِمِينَ ﴿٦٤﴾ |
| 65. ಅವರು ತಮ್ಮ ಹಸುಬೆಗಳನ್ನು ಬಿಚ್ಚಿದಾಗ ತಮ್ಮ ಸರಕುಗಳನ್ನು ಕಂಡರು. ಅದನ್ನು ಅವರಿಗೆ ಹಿಂದಿರುಗಿಸಲಾಗಿತ್ತು. ಅವರು ಹೇಳಿದರು: “ಅಪ್ಪಾ! ನಮಗೆ ಇನ್ನೇನು ಬೇಕು? ಇಗೋ ನಮ್ಮ ಸರಕುಗಳನ್ನು ನಮಗೇ ಮರಳಿಸಲಾಗಿದೆ. ಆದರೂ ನಾವು ನಮ್ಮ ಕುಟುಂಬಕ್ಕೆ ಆಹಾರ ಸಾಮಗ್ರಿಗಳನ್ನು ತರುವೆವು ಮತ್ತು ನಮ್ಮ ಸಹೋದರನನ್ನು ಕಾಪಾಡುವೆವು. ಒಂದು ಒಂಟೆ ಹೊರುವ ಧಾನ್ಯಗಳನ್ನು ಹೆಚ್ಚಿಗೆ ತರುವೆವು. ಅದು ಬಹಳ ಸುಲಭದ ಅಳತೆಯಾಗಿದೆ.”[1] | وَلَمَّا فَتَحُواْ مَتَٰعَهُمْ وَجَدُواْ بِضَٰعَتَهُمْ رُدَّتْ إِلَيْهِمْۖ قَالُواْ يَٰٓأَبَانَا مَا نَبْغِيۖ هَٰذِهِۦ بِضَٰعَتُنَا رُدَّتْ إِلَيْنَاۖ وَنَمِيرُ أَهْلَنَا وَنَحْفَظُ أَخَانَا وَنَزْدَادُ كَيْلَ بَعِيرٍۖ ذَٰلِكَ كَيْلٌ يَسِيرٌ ﴿٦٥﴾ |
| 66. ತಂದೆ ಹೇಳಿದರು: “ನೀವು ಅವನನ್ನು ನನ್ನ ಬಳಿಗೆ ವಾಪಸು ತರುತ್ತೀರಿ ಎಂದು ನೀವು ಅಲ್ಲಾಹನ ಹೆಸರಲ್ಲಿ ನನಗೆ ಖಾತ್ರಿ ನೀಡುವ ತನಕ ನಾನು ಅವನನ್ನು ನಿಮ್ಮ ಜೊತೆಗೆ ಕಳುಹಿಸುವುದೇ ಇಲ್ಲ. ಆದರೆ ನೀವು (ಅಪಾಯಗಳಿಂದ) ಸುತ್ತು-ವರಿಯಲಾಗುವ ಹೊರತು.” ಅವರು ತಂದೆಗೆ ಖಾತ್ರಿ ನೀಡಿದಾಗ ತಂದೆ ಹೇಳಿದರು: “ನಾವು ಹೇಳುತ್ತಿರುವ ಮಾತುಗಳಿಗೆ ಅಲ್ಲಾಹನೇ ಮೇಲ್ವಿಚಾರಕನು.” | قَالَ لَنْ أُرْسِلَهُۥ مَعَكُمْ حَتَّىٰ تُؤْتُونِ مَوْثِقًا مِّنَ ٱللَّهِ لَتَأْتُنَّنِي بِهِۦٓ إِلَّآ أَن يُحَاطَ بِكُمْۖ فَلَمَّآ ءَاتَوْهُ مَوْثِقَهُمْ قَالَ ٱللَّهُ عَلَىٰ مَا نَقُولُ وَكِيلٌ ﴿٦٦﴾ |
| 67. ತಂದೆ ಹೇಳಿದರು: “ನನ್ನ ಪ್ರೀತಿಯ ಮಕ್ಕಳೇ! ನೀವು ಒಂದೇ | وَقَالَ يَٰبَنِيَّ لَا تَدْخُلُواْ مِنۢ بَابٍ وَٰحِدٍ |

[1] ಇದರ ಒಂದು ಅರ್ಥವೇನೆಂದರೆ ಅರಸನಿಗೆ ಒಂದು ಒಂಟೆ ಹೊರುವ ಧಾನ್ಯಗಳನ್ನು ಹೆಚ್ಚಿಗೆ ಕೊಡುವುದು ಕಷ್ಟದ ವಿಷಯವೇನಲ್ಲ. ಇನ್ನೊಂದು ಅರ್ಥವೇನೆಂದರೆ ನಾವು ಈಗಾಗಲೇ ತಂದಿರುವ ಧಾನ್ಯಗಳು ನಮಗೆ ಸುಲಭದಲ್ಲಿ ಸಿಕ್ಕಿದ ಧಾನ್ಯಗಳಾಗಿವೆ. ನಾವು ತಮ್ಮನನ್ನು ಕರೆದುಕೊಂಡು ಹೋದರೆ ನಮಗೆ ಇದಕ್ಕಿಂತಲೂ ಹೆಚ್ಚು ಧಾನ್ಯ ಸಿಗುತ್ತದೆ.

ಬಾಗಿಲಿನಿಂದ ಪ್ರವೇಶ ಮಾಡಬೇಡಿ. ಬದಲಿಗೆ, ಬೇರೆ ಬೇರೆ ಬಾಗಿಲುಗಳಿಂದ ಪ್ರವೇಶ ಮಾಡಿರಿ. ಅಲ್ಲಾಹನ ಕಡೆಯಿಂದ ಬರುವ ಏನನ್ನೂ ನಿಮ್ಮಿಂದ ತಡೆಗಟ್ಟಲು ನನಗೆ ಸಾಧ್ಯವಿಲ್ಲ. ತೀರ್ಪು ನೀಡುವ ಅಧಿಕಾರವಿರುವುದು ಅಲ್ಲಾಹನಿಗೆ ಮಾತ್ರ. ನಾನು ಅವನಲ್ಲಿ ಭರವಸೆಯಿಟ್ಟಿದ್ದೇನೆ. ಭರವಸೆಯಿಡುವವರು ಅವನಲ್ಲಿಯೇ ಭರವಸೆಯಿಡಲಿ."[1]

وَٱدۡخُلُواْ مِنۡ أَبۡوَٰبٖ مُّتَفَرِّقَةٖۖ وَمَآ أُغۡنِي عَنكُم مِّنَ ٱللَّهِ مِن شَيۡءٍۖ إِنِ ٱلۡحُكۡمُ إِلَّا لِلَّهِۖ عَلَيۡهِ تَوَكَّلۡتُۖ وَعَلَيۡهِ فَلۡيَتَوَكَّلِ ٱلۡمُتَوَكِّلُونَ ﴿٦٧﴾

---

68. ಅವರ ತಂದೆ ಆದೇಶಿಸಿದ ಕಡೆಯಿಂದಲೇ ಅವರು ಪ್ರವೇಶ ಮಾಡಿದಾಗ, ಅಲ್ಲಾಹು ತೀರ್ಮಾನಿಸಿದ ಯಾವುದನ್ನೂ ಅವರಿಂದ ತಡೆಗಟ್ಟಲು ಅವರಿಗೆ (ಯಾಕೂಬರಿಗೆ) ಸಾಧ್ಯವಾಗಲಿಲ್ಲ. ಯಾಕೂಬರು ತಮ್ಮ ಮನಸ್ಸಿನಲ್ಲಿದ್ದ ಒಂದು ಆಸೆಯನ್ನು ನೆರವೇರಿಸಿದರು ಎಂದು ಮಾತ್ರ. ನಿಶ್ಚಯವಾಗಿಯೂ ಅವರು ನಾವು ಅವರಿಗೆ ಕಲಿಸಿಕೊಟ್ಟ ಜ್ಞಾನದಿಂದಾಗಿ ಒಬ್ಬ ವಿದ್ವಾಂಸರಾಗಿದ್ದಾರೆ. ಆದರೆ ಜನರಲ್ಲಿ ಹೆಚ್ಚಿನವರು ತಿಳಿಯುವುದಿಲ್ಲ.

وَلَمَّا دَخَلُواْ مِنۡ حَيۡثُ أَمَرَهُمۡ أَبُوهُم مَّا كَانَ يُغۡنِي عَنۡهُم مِّنَ ٱللَّهِ مِن شَيۡءٍ إِلَّا حَاجَةٗ فِي نَفۡسِ يَعۡقُوبَ قَضَىٰهَاۚ وَإِنَّهُۥ لَذُو عِلۡمٖ لِّمَا عَلَّمۡنَٰهُ وَلَٰكِنَّ أَكۡثَرَ ٱلنَّاسِ لَا يَعۡلَمُونَ ﴿٦٨﴾

---

69. ಅವರು (ಸಹೋದರರು) ಯೂಸುಫರ ಬಳಿಗೆ ತೆರಳಿದಾಗ, ಯೂಸುಫ್ ತಮ್ಮನನ್ನು ಬಳಿಯಲ್ಲಿ ಕೂರಿಸಿ ಹೇಳಿದರು: "ನಿಜಕ್ಕೂ ನಾನೇ ನಿನ್ನ ಅಣ್ಣ. ಆದ್ದರಿಂದ ಅವರು ಮಾಡುವ ಕೆಲಸಗಳಿಂದ ಬೇಸರಪಡಬೇಡ."

وَلَمَّا دَخَلُواْ عَلَىٰ يُوسُفَ ءَاوَىٰٓ إِلَيۡهِ أَخَاهُۖ قَالَ إِنِّيٓ أَنَا۠ أَخُوكَ فَلَا تَبۡتَئِسۡ بِمَا كَانُواْ يَعۡمَلُونَ ﴿٦٩﴾

---

70. ನಂತರ ಅವರಿಗೆ ಬೇಕಾದ ಆಹಾರ ಸಾಮಗ್ರಿಗಳನ್ನು ಸಜ್ಜುಗೊಳಿಸಿದಾಗ ಯೂಸುಫ್ ತಮ್ಮನ ಹಸುಬೆಯಲ್ಲಿ ಪಾನಪಾತ್ರೆಯನ್ನು (ಧಾನ್ಯಗಳನ್ನು ಅಳೆಯುವ ಪಾತ್ರೆ) ಹಾಕಿದರು. ನಂತರ ಒಬ್ಬ ಉದ್ಘೋಷಕ ಕೂಗಿ ಹೇಳಿದನು: "ಓ ದಾರಿಗ ತಂಡದವರೇ! ನಿಜಕ್ಕೂ ನೀವು ಕಳ್ಳರೇ ಆಗಿದ್ದೀರಿ!"

فَلَمَّا جَهَّزَهُم بِجَهَازِهِمۡ جَعَلَ ٱلسِّقَايَةَ فِي رَحۡلِ أَخِيهِ ثُمَّ أَذَّنَ مُؤَذِّنٌ أَيَّتُهَا ٱلۡعِيرُ إِنَّكُمۡ لَسَٰرِقُونَ ﴿٧٠﴾

---

71. ಅವರು ಆತನ ಕಡೆಗೆ ತಿರುಗಿ ಕೇಳಿದರು: "ನಿಮ್ಮಲ್ಲಿ ಏನು ಕಾಣೆಯಾಗಿದೆ?"

قَالُواْ وَأَقۡبَلُواْ عَلَيۡهِم مَّاذَا تَفۡقِدُونَ ﴿٧١﴾

---

72. ಅವರು ಹೇಳಿದರು: "ಅರಸನ ಪಾನಪಾತ್ರೆ ಕಾಣೆಯಾಗಿದೆ. ಯಾರು ಅದನ್ನು ತಂದು ಕೊಡುತ್ತಾರೋ ಅವನಿಗೆ ಒಂದು

قَالُواْ نَفۡقِدُ صُوَاعَ ٱلۡمَلِكِ وَلِمَن جَآءَ بِهِۦ حِمۡلُ بَعِيرٖ وَأَنَا۠ بِهِۦ زَعِيمٞ ﴿٧٢﴾

---

[1] ಸ್ಫುರದ್ರೂಪಿಗಳು ಮತ್ತು ಉತ್ತಮ ದೇಹದಾರ್ಢ್ಯವನ್ನು ಹೊಂದಿರುವ ತನ್ನ ಹನ್ನೊಂದು ಮಕ್ಕಳು ಒಟ್ಟೊಟ್ಟಿಗೆ ಪ್ರವೇಶ ಮಾಡುವಾಗ ಜನರು ಅವರನ್ನು ಕಂಡು ಬೆರಗಾಗುವರು ಮತ್ತು ಅಸೂಯೆಪಡುವರು. ಇದರಿಂದ ಅವರಿಗೆ ದೃಷ್ಟಿ ತಾಗುವ ಸಾಧ್ಯತೆಯಿದೆ. ಜನರ ದೃಷ್ಟಿಯಿಂದ ಅವರನ್ನು ಕಾಪಾಡಲು ಯಾಕೂಬ್ (ಅವರ ಮೇಲೆ ಶಾಂತಿಯಿರಲಿ) ಈ ಉಪಾಯವನ್ನು ಹೇಳಿದ್ದರು. ಆದರೆ ಇದರ ಹೊರತಾಗಿಯೂ ದೃಷ್ಟಿ ತಾಗಬೇಕೆಂದು ಅಲ್ಲಾಹನ ವಿಧಿಸಿದ್ದರೆ ಅದನ್ನು ತಡೆಗಟ್ಟಲು ಯಾರಿಗೂ ಸಾಧ್ಯವಿಲ್ಲ. ಇದು ಕೇವಲ ಒಂದು ಮುಂಜಾಗೃತಾ ಕ್ರಮ ಮಾತ್ರವಾಗಿದೆ.

ಒಂಟೆ ಹೊರುವಷ್ಟು ಧಾನ್ಯವನ್ನು ನೀಡಲಾಗುವುದು. ಅದರ ಹೊಣೆಯನ್ನು ನಾನು ವಹಿಸಿಕೊಂಡಿದ್ದೇನೆ."

---

73. ಅವರು ಹೇಳಿದರು: "ಅಲ್ಲಾಹನಾಣೆ! ನಾವು ರಾಜ್ಯದಲ್ಲಿ ಕಿಡಿಗೇಡಿತನ ಮಾಡಲು ಬಂದವರಲ್ಲ ಮತ್ತು ನಾವು ಕಳ್ಳರೂ ಅಲ್ಲ ಎಂದು ನಿಮಗೆ ಚೆನ್ನಾಗಿ ತಿಳಿದಿದೆ."

قَالُواْ تَٱللَّهِ لَقَدۡ عَلِمۡتُم مَّا جِئۡنَا لِنُفۡسِدَ فِي ٱلۡأَرۡضِ وَمَا كُنَّا سَٰرِقِينَ ٧٣

---

74. ಅವರು ಕೇಳಿದರು: "ನೀವು ಹೇಳುವ ಮಾತು ಸುಳ್ಳಾಗಿ (ನೀವೇ ಕಳ್ಳರಾಗಿದ್ದರೆ) ಅದಕ್ಕೆ ನೀಡಲಾಗುವ ಶಿಕ್ಷೆಯೇನು?"

قَالُواْ فَمَا جَزَٰٓؤُهُۥٓ إِن كُنتُمۡ كَٰذِبِينَ ٧٤

---

75. ಅವರು ಉತ್ತರಿಸಿದರು: "ಅದಕ್ಕಿರುವ ಶಿಕ್ಷೆಯೇನೆಂದರೆ ಯಾರ ಹಸುಬೆಯಲ್ಲಿ ಅದು ಪತ್ತೆಯಾಗುವುದೋ ಅವನನ್ನೇ ಅದಕ್ಕೆ ಬದಲಿಯಾಗಿ ಹಿಡಿಯಬೇಕು. ಅಕ್ರಮಿಗಳಿಗೆ ನಾವು ಹೀಗೆಯೇ ಶಿಕ್ಷೆ ನೀಡುತ್ತೇವೆ."[1]

قَالُواْ جَزَٰٓؤُهُۥ مَن وُجِدَ فِي رَحۡلِهِۦ فَهُوَ جَزَٰٓؤُهُۥۚ كَذَٰلِكَ نَجۡزِي ٱلظَّٰلِمِينَ ٧٥

---

76. ತಮ್ಮನ ಚೀಲವನ್ನು ತಪಾಸಣೆ ಮಾಡುವುದಕ್ಕೆ ಮುನ್ನ ಯೂಸುಫ್ ಅವರ (ಸಹೋದರರ) ಚೀಲಗಳನ್ನು ತಪಾಸಣೆ ಮಾಡಲು ಆರಂಭಿಸಿದರು. ನಂತರ ಅದನ್ನು ತಮ್ಮನ ಚೀಲದಿಂದ ಹೊರತೆಗೆದರು. ನಾವು ಯೂಸುಫರಿಗಾಗಿ ಈ ರೀತಿಯಲ್ಲಿ ತಂತ್ರಗಾರಿಕೆ ಮಾಡಿದೆವು. ಏಕೆಂದರೆ, ಅರಸನ ಕಾನೂನಿನ ಪ್ರಕಾರ ಅವರಿಗೆ ತಮ್ಮನನ್ನು ವಶಕ್ಕೆ ಪಡೆಯಲಾಗುತ್ತಿರಲಿಲ್ಲ[2]—ಅಲ್ಲಾಹು ಇಚ್ಛಿಸಿದರೆ ಹೊರತು. ನಾವು ಇಚ್ಛಿಸುವವರ ಸ್ಥಾನ-ಮಾನಗಳನ್ನು ನಾವು ಎತ್ತರಕ್ಕೇರಿಸುತ್ತೇವೆ. ಪ್ರತಿಯೊಬ್ಬ ಜ್ಞಾನಿಯ ಮೇಲೆ ಇನ್ನೊಬ್ಬ ಮಹಾಜ್ಞಾನಿಯಿದ್ದಾನೆ.

فَبَدَأَ بِأَوۡعِيَتِهِمۡ قَبۡلَ وِعَآءِ أَخِيهِ ثُمَّ ٱسۡتَخۡرَجَهَا مِن وِعَآءِ أَخِيهِۚ كَذَٰلِكَ كِدۡنَا لِيُوسُفَۖ مَا كَانَ لِيَأۡخُذَ أَخَاهُ فِي دِينِ ٱلۡمَلِكِ إِلَّآ أَن يَشَآءَ ٱللَّهُۚ نَرۡفَعُ دَرَجَٰتٖ مَّن نَّشَآءُۗ وَفَوۡقَ كُلِّ ذِي عِلۡمٍ عَلِيمٞ ٧٦

---

77. ಸಹೋದರರು ಹೇಳಿದರು: "ಈತ ಕಳ್ಳತನ ಮಾಡಿದ್ದರೆ (ಅದರಲ್ಲಿ ಅಚ್ಚರಿಪಡುವಂತದ್ದೇನೂ ಇಲ್ಲ). ಏಕೆಂದರೆ ಇದಕ್ಕೆ ಮೊದಲು ಈತನ ಅಣ್ಣನೂ ಕಳ್ಳತನ ಮಾಡಿದ್ದ." ಯೂಸುಫ್ ಅದನ್ನು ಮನಸ್ಸಿನಲ್ಲೇ ಬಚ್ಚಿಟ್ಟುಕೊಂಡರು. ಅದನ್ನು ಅವರ ಮುಂದೆ ಬಹಿರಂಗಪಡಿಸಲಿಲ್ಲ. ಯೂಸುಫ್ (ಸ್ವಗತವಾಗಿ) ಹೇಳಿದರು: "ನೀವು ನಿಕೃಷ್ಟ ಸ್ಥಾನದಲ್ಲಿದ್ದೀರಿ. ನೀವು ವರ್ಣಿಸುವ ಈ ವಿಷಯದ ಬಗ್ಗೆ ಅಲ್ಲಾಹು ಬಹಳ ಚೆನ್ನಾಗಿ ತಿಳಿದಿದ್ದಾನೆ."

قَالُوٓاْ إِن يَسۡرِقۡ فَقَدۡ سَرَقَ أَخٞ لَّهُۥ مِن قَبۡلُۚ فَأَسَرَّهَا يُوسُفُ فِي نَفۡسِهِۦ وَلَمۡ يُبۡدِهَا لَهُمۡۚ قَالَ أَنتُمۡ شَرّٞ مَّكَانٗاۖ وَٱللَّهُ أَعۡلَمُ بِمَا تَصِفُونَ ٧٧

---

78. ಅವರು ಹೇಳಿದರು: "ಓ ಅಝೀಝರೇ! ಅವನಿಗೆ ಒಬ್ಬ

قَالُواْ يَٰٓأَيُّهَا ٱلۡعَزِيزُ إِنَّ لَهُۥٓ أَبٗا شَيۡخٗا

---

[1] ಅಂದರೆ ಕಳ್ಳನನ್ನು ಅವನು ಯಾರಿಂದ ಕಳ್ಳತನ ಮಾಡಿದನೋ ಅವನ ಸುಪರ್ದಿಗೆ ಬಿಡಲಾಗುತ್ತದೆ. ಇದು ಯಾಕೂಬ್ (ಅವರ ಮೇಲೆ ಶಾಂತಿಯಿರಲಿ) ರವರ ಶರಿಯತ್‌ನಲ್ಲಿರುವ (ಧರ್ಮಸಂಹಿತೆಯಲ್ಲಿರುವ) ಶಿಕ್ಷೆಯಾಗಿದೆ.

[2] ಅಂದರೆ ಈಜಿಪ್ಟ್ ದೇಶದ ಕಾನೂನು ಪ್ರಕಾರ ಈ ರೀತಿಯಲ್ಲಿ ತಮ್ಮನನ್ನು ವಶಕ್ಕೆ ಪಡೆಯಲು ಸಾಧ್ಯವಾಗುತ್ತಿರಲಿಲ್ಲ. ಆದ್ದರಿಂದ ಯೂಸುಫ್ (ಅವರ ಮೇಲ ಶಾಂತಿಯಿರಲಿ) ಅವರಲ್ಲಿ ಅವರ ಕಾನೂನಿನ ಬಗ್ಗೆ ಕೇಳಿ ಅದರಂತೆಯೇ ತೀರ್ಪು ನೀಡಿದರು.

ವಯೋವೃದ್ಧ ತಂದೆಯಿದ್ದಾರೆ. ಆದ್ದರಿಂದ ಅವನ ಸ್ಥಾನದಲ್ಲಿ ನಮ್ಮಲ್ಲೊಬ್ಬನನ್ನು ಹಿಡಿಯಿರಿ. ನಿಜಕ್ಕೂ ನಿಮ್ಮನ್ನು ನಾವು ನೀತಿವಂತರಂತೆ ಕಾಣುತ್ತಿದ್ದೇವೆ."

كَبِيرٗا فَخُذۡ أَحَدَنَا مَكَانَهُۥٓۖ إِنَّا نَرَىٰكَ
مِنَ ٱلۡمُحۡسِنِينَ ٧٨

---

79. ಯೂಸುಫ್ ಹೇಳಿದರು: "ಅಲ್ಲಾಹನಿಗೆ ಶರಣು! ನಾವು ನಮ್ಮ ವಸ್ತುವನ್ನು ಯಾರಲ್ಲಿ ಪತ್ತೆ ಮಾಡಿದೆವೋ ಅವನನ್ನು ಬಿಟ್ಟು ಬೇರೊಬ್ಬನನ್ನು ಹಿಡಿಯುವುದೇ? ಹಾಗೇನಾದರೂ ಆದರೆ ನಾವು ನಿಜಕ್ಕೂ ಅಕ್ರಮಿಗಳಾಗುವೆವು."

قَالَ مَعَاذَ ٱللَّهِ أَن نَّأۡخُذَ إِلَّا مَن وَجَدۡنَا مَتَٰعَنَا
عِندَهُۥٓ إِنَّآ إِذٗا لَّظَٰلِمُونَ ٧٩

---

80. ನಂತರ ಅವರು ತಮ್ಮನ ಬಗ್ಗೆ ನಿರಾಶರಾದಾಗ, ಏಕಾಂತ ಸ್ಥಳದಲ್ಲಿ ಕುಳಿತು ಸಮಾಲೋಚನೆ ಮಾಡಿದರು. ಅವರಲ್ಲಿ ಹಿರಿಯವನು ಹೇಳಿದನು: "ನಿಮ್ಮ ತಂದೆ ನಿಮ್ಮಿಂದ ಅಲ್ಲಾಹನ ಹೆಸರಿನಲ್ಲಿ ಖಾತ್ರಿ ಪಡೆದದ್ದು ಮತ್ತು ಇದಕ್ಕೆ ಮೊದಲು ನೀವು ಯೂಸುಫರ ವಿಷಯದಲ್ಲಿ ತಪ್ಪೆಸಗಿದ್ದು ನಿಮಗೆ ತಿಳಿದಿಲ್ಲವೇ? ಆದ್ದರಿಂದ ನನ್ನ ತಂದೆ ನನಗೆ ಅಪ್ಪಣೆ ನೀಡುವ ತನಕ ಅಥವಾ ಅಲ್ಲಾಹು ನನ್ನ ವಿಷಯದಲ್ಲಿ ತೀರ್ಪು ನೀಡುವ ತನಕ ನಾನು ಈ ಸ್ಥಳದಿಂದ ಕದಲುವುದೇ ಇಲ್ಲ. ತೀರ್ಪು ನೀಡುವುದರಲ್ಲಿ ಅವನು ಅತಿಶ್ರೇಷ್ಠನಾಗಿದ್ದಾನೆ.

فَلَمَّا ٱسۡتَيۡـَٔسُواْ مِنۡهُ خَلَصُواْ نَجِيّٗاۖ قَالَ كَبِيرُهُمۡ
أَلَمۡ تَعۡلَمُوٓاْ أَنَّ أَبَاكُمۡ قَدۡ أَخَذَ عَلَيۡكُم
مَّوۡثِقٗا مِّنَ ٱللَّهِ وَمِن قَبۡلُ مَا فَرَّطتُمۡ فِي يُوسُفَۖ
فَلَنۡ أَبۡرَحَ ٱلۡأَرۡضَ حَتَّىٰ يَأۡذَنَ لِيٓ أَبِيٓ أَوۡ
يَحۡكُمَ ٱللَّهُ لِيۖ وَهُوَ خَيۡرُ ٱلۡحَٰكِمِينَ ٨٠

---

81. ನೀವು ನಿಮ್ಮ ತಂದೆಯ ಬಳಿಗೆ ಮರಳಿ ಹೋಗಿ ಹೇಳಿರಿ: ಅಪ್ಪಾ! ನಿಜಕ್ಕೂ ನಿಮ್ಮ ಮಗ ಕಳ್ಳತನ ಮಾಡಿದ್ದಾನೆ. ನಮಗೇನು ತಿಳಿದಿದೆಯೋ ಅದನ್ನೇ ನಾವು ಸಾಕ್ಷಿ ನುಡಿದಿದ್ದೇವೆ. ನಮಗಂತೂ ಅದೃಶ್ಯ ವಿಷಯಗಳ ಬಗ್ಗೆ ಸಾಕ್ಷಿ ನುಡಿಯಲು ಸಾಧ್ಯವಿಲ್ಲ.

ٱرۡجِعُوٓاْ إِلَىٰٓ أَبِيكُمۡ فَقُولُواْ يَٰٓأَبَانَآ إِنَّ ٱبۡنَكَ
سَرَقَ وَمَا شَهِدۡنَآ إِلَّا بِمَا عَلِمۡنَا وَمَا كُنَّا
لِلۡغَيۡبِ حَٰفِظِينَ ٨١

---

82. ನಾವು ತೆರಳಿದ್ದ ಆ ನಗರದ ಜನರೊಡನೆ ಮತ್ತು ನಾವು ಜೊತೆಯಾಗಿ ಬಂದ ಆ ದಾರಿಗ ತಂಡದೊಡನೆ ಕೇಳಿರಿ. ಖಂಡಿತವಾಗಿಯೂ ನಾವು ಸತ್ಯವನ್ನೇ ಹೇಳುತ್ತಿದ್ದೇವೆ."

وَسۡـَٔلِ ٱلۡقَرۡيَةَ ٱلَّتِي كُنَّا فِيهَا وَٱلۡعِيرَ ٱلَّتِيٓ
أَقۡبَلۡنَا فِيهَاۖ وَإِنَّا لَصَٰدِقُونَ ٨٢

---

83. ತಂದೆ ಹೇಳಿದರು: "ಅಲ್ಲ, ವಾಸ್ತವವಾಗಿ ನೀವು ನಿಮ್ಮ ಮನಸ್ಸಿನಲ್ಲಿಯೇ ಒಂದು ವಿಷಯವನ್ನು ಕಲ್ಪಿಸಿ ತಂದಿದ್ದೀರಿ. ಆದ್ದರಿಂದ ತಾಳ್ಮೆಯಿಂದಿರುವುದೇ ಉತ್ತಮ. ಅಲ್ಲಾಹು ಅವರೆಲ್ಲರನ್ನೂ ನನ್ನ ಬಳಿಗೆ ಕರೆತರಲೂಬಹುದು. ನಿಶ್ಚಯವಾಗಿಯೂ ಅವನು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ."

قَالَ بَلۡ سَوَّلَتۡ لَكُمۡ أَنفُسُكُمۡ أَمۡرٗاۖ فَصَبۡرٞ
جَمِيلٌۖ عَسَى ٱللَّهُ أَن يَأۡتِيَنِي بِهِمۡ جَمِيعًاۚ إِنَّهُۥ
هُوَ ٱلۡعَلِيمُ ٱلۡحَكِيمُ ٨٣

---

84. ನಂತರ ಅವರು (ಯಾಕೂಬ್) ಮಕ್ಕಳಿಂದ ತಿರುಗಿ ನಡೆಯುತ್ತಾ, "ಅಯ್ಯೋ ಯೂಸುಫ್!" ಎಂದು ಮರುಗಿದರು. ದುಃಖದಿಂದ

وَتَوَلَّىٰ عَنۡهُمۡ وَقَالَ يَٰٓأَسَفَىٰ عَلَىٰ يُوسُفَ
وَٱبۡيَضَّتۡ عَيۡنَاهُ مِنَ ٱلۡحُزۡنِ فَهُوَ كَظِيمٞ ٨٤

ಅವರ ಕಣ್ಣಿನ ಪಾಪೆಗಳು ಬಿಳಿಯಾಗಿದ್ದವು. ಅವರು ದುಃಖವನ್ನು ನುಂಗಿಕೊಳ್ಳುತ್ತಿದ್ದರು.

---

85. ಮಕ್ಕಳು ಹೇಳಿದರು: "ಅಲ್ಲಾಹನಾಣೆ! ನೀವು ಸಂಪೂರ್ಣ ಸೊರಗಿ ಬಿಡುವ ತನಕ ಅಥವಾ ಪ್ರಾಣ ಕಳೆದುಕೊಳ್ಳುವ ತನಕ ಯೂಸುಫರನ್ನು ನೆನೆಯುತ್ತಲೇ ಇರುವಿರಿ!"

قَالُواْ تَٱللَّهِ تَفۡتَؤُاْ تَذۡكُرُ يُوسُفَ حَتَّىٰ تَكُونَ حَرَضًا أَوۡ تَكُونَ مِنَ ٱلۡهَٰلِكِينَ ٨٥

---

86. ತಂದೆ ಹೇಳಿದರು: "ನಾನು ನನ್ನ ನೋವು ಮತ್ತು ದುಃಖವನ್ನು ಅಲ್ಲಾಹನ ಮುಂದೆ ಮಾತ್ರ ತೋಡಿಕೊಳ್ಳುತ್ತೇನೆ. ನನಗೆ ಅಲ್ಲಾಹನಿಂದ ನೀವು ತಿಳಿಯದ ವಿಷಯಗಳು ತಿಳಿದಿವೆ.

قَالَ إِنَّمَآ أَشۡكُواْ بَثِّي وَحُزۡنِيٓ إِلَى ٱللَّهِ وَأَعۡلَمُ مِنَ ٱللَّهِ مَا لَا تَعۡلَمُونَ ٨٦

---

87. ನನ್ನ ಪ್ರೀತಿಯ ಮಕ್ಕಳೇ! ಹೊರಡಿ. ಯೂಸುಫ್ ಮತ್ತು ಅವನ ತಮ್ಮನನ್ನು ಹುಡುಕಿರಿ. ಅಲ್ಲಾಹನ ದಯೆಯ ಬಗ್ಗೆ ನಿರಾಶರಾಗಬೇಡಿ. ನಿಶ್ಚಯವಾಗಿಯೂ ಸತ್ಯನಿಷೇಧಿಗಳ ಹೊರತು ಬೇರೆ ಯಾರೂ ಅಲ್ಲಾಹನ ದಯೆಯ ಬಗ್ಗೆ ನಿರಾಶರಾಗುವುದಿಲ್ಲ."

يَٰبَنِيَّ ٱذۡهَبُواْ فَتَحَسَّسُواْ مِن يُوسُفَ وَأَخِيهِ وَلَا تَاْيۡـَٔسُواْ مِن رَّوۡحِ ٱللَّهِۖ إِنَّهُۥ لَا يَاْيۡـَٔسُ مِن رَّوۡحِ ٱللَّهِ إِلَّا ٱلۡقَوۡمُ ٱلۡكَٰفِرُونَ ٨٧

---

88. ನಂತರ ಅವರು ಯೂಸುಫರ ಬಳಿಗೆ ತೆರಳಿ ಹೇಳಿದರು: "ಓ ಅಝೀಝರೇ! ನಮಗೂ ನಮ್ಮ ಕುಟುಂಬಕ್ಕೂ ತೊಂದರೆಯಾಗಿದೆ. ನಾವು ಕಳಪೆ ಸರಕುಗಳನ್ನು ತಂದಿದ್ದೇವೆ. ನಮಗೆ (ಧಾನ್ಯಗಳನ್ನು) ಪೂರ್ಣವಾಗಿ ಅಳೆದುಕೊಡಿ. ನಮಗೆ ದಾನ ಮಾಡಿ. ದಾನ ಮಾಡುವವರಿಗೆ ಅಲ್ಲಾಹು ಖಂಡಿತ ಪ್ರತಿಫಲವನ್ನು ನೀಡುತ್ತಾನೆ."

فَلَمَّا دَخَلُواْ عَلَيۡهِ قَالُواْ يَٰٓأَيُّهَا ٱلۡعَزِيزُ مَسَّنَا وَأَهۡلَنَا ٱلضُّرُّ وَجِئۡنَا بِبِضَٰعَةٖ مُّزۡجَىٰةٖ فَأَوۡفِ لَنَا ٱلۡكَيۡلَ وَتَصَدَّقۡ عَلَيۡنَآۖ إِنَّ ٱللَّهَ يَجۡزِي ٱلۡمُتَصَدِّقِينَ ٨٨

---

89. ಯೂಸುಫ್ ಹೇಳಿದರು: "ನೀವು ಅವಿವೇಕಿಗಳಾಗಿದ್ದಾಗ ನೀವು ಯೂಸುಫ್ ಮತ್ತು ಅವನ ತಮ್ಮನಿಗೆ ಏನು ಮಾಡಿದ್ದೀರೆಂದು ನಿಮಗೆ ತಿಳಿದಿದೆಯೇ?"

قَالَ هَلۡ عَلِمۡتُم مَّا فَعَلۡتُم بِيُوسُفَ وَأَخِيهِ إِذۡ أَنتُمۡ جَٰهِلُونَ ٨٩

---

90. ಅವರು ಕೇಳಿದರು: "ನಿಜಕ್ಕೂ ಯೂಸುಫ್ ನೀವೇ ಏನು?" ಯೂಸುಫ್ ಹೇಳಿದರು: "ಹೌದು, ನಾನೇ ಯೂಸುಫ್. ಇದು ನನ್ನ ತಮ್ಮ. ಅಲ್ಲಾಹು ನಮಗೆ ಉಪಕಾರ ಮಾಡಿದ್ದಾನೆ. ನಿಜವಾಗಿಯೂ ಅಲ್ಲಾಹನನ್ನು ಭಯಪಡುವವರು ಮತ್ತು ತಾಳ್ಮೆಯಿಂದಿರುವವರು ಯಾರೋ—ಅಂತಹ ಒಳಿತು ಮಾಡುವ ಜನರ ಪ್ರತಿಫಲವನ್ನು ಅಲ್ಲಾಹು ಖಂಡಿತ ವ್ಯರ್ಥಗೊಳಿಸುವುದಿಲ್ಲ."

قَالُوٓاْ أَءِنَّكَ لَأَنتَ يُوسُفُۖ قَالَ أَنَا۠ يُوسُفُ وَهَٰذَآ أَخِيۖ قَدۡ مَنَّ ٱللَّهُ عَلَيۡنَآۖ إِنَّهُۥ مَن يَتَّقِ وَيَصۡبِرۡ فَإِنَّ ٱللَّهَ لَا يُضِيعُ أَجۡرَ ٱلۡمُحۡسِنِينَ ٩٠

---

91. ಅವರು ಹೇಳಿದರು: "ಅಲ್ಲಾಹನಾಣೆ! ಅಲ್ಲಾಹು ನಮಗಿಂತಲೂ ಹೆಚ್ಚು ನಿನಗೆ ಶ್ರೇಷ್ಠತೆಯನ್ನು ನೀಡಿದ್ದಾನೆ. ನಾವಂತೂ ಖಂಡಿತ

قَالُواْ تَٱللَّهِ لَقَدۡ ءَاثَرَكَ ٱللَّهُ عَلَيۡنَا وَإِن كُنَّا لَخَٰطِـِٔينَ ٩١

ತಪ್ಪಿತಸ್ಥರಾಗಿದ್ದೆವು."

---

92. ಯೂಸುಫ್ ಹೇಳಿದರು: "ಇಂದು ನಿಮ್ಮ ಮೇಲೆ ಯಾವುದೇ ದೋಷಾರೋಪಣೆಯಿಲ್ಲ. ಅಲ್ಲಾಹು ನಿಮ್ಮನ್ನು ಕ್ಷಮಿಸಲಿ. ಅವನು ದಯೆ ತೋರುವವರಲ್ಲೇ ಅತ್ಯಧಿಕ ದಯೆ ತೋರುವವನಾಗಿದ್ದಾನೆ.

قَالَ لَا تَثۡرِيبَ عَلَيۡكُمُ ٱلۡيَوۡمَۖ يَغۡفِرُ ٱللَّهُ
لَكُمۡۖ وَهُوَ أَرۡحَمُ ٱلرَّٰحِمِينَ ٩٢

---

93. ನನ್ನ ಈ ಅಂಗಿಯನ್ನು ತೆಗೆದುಕೊಂಡು ಹೋಗಿ ನನ್ನ ತಂದೆಯ ಮುಖದ ಮೇಲೆ ಎಸೆಯಿರಿ. ಆಗ ಅವರಿಗೆ ದೃಷ್ಟಿ ಮರಳಿ ಬರುತ್ತದೆ. ನಿಮ್ಮ ಸಂಪೂರ್ಣ ಕುಟುಂಬವನ್ನು ಕರೆದುಕೊಂಡು ಬನ್ನಿ."

ٱذۡهَبُواْ بِقَمِيصِي هَٰذَا فَأَلۡقُوهُ عَلَىٰ وَجۡهِ أَبِي
يَأۡتِ بَصِيرٗا وَأۡتُونِي بِأَهۡلِكُمۡ أَجۡمَعِينَ ٩٣

---

94. ದಾರಿಗ ತಂಡವು (ಈಜಿಪ್ಟಿನಿಂದ) ನಿರ್ಗಮಿಸಿದಾಗ, ಇತ್ತ ಅವರ ತಂದೆ ಹೇಳಿದರು: "ನಿಜಕ್ಕೂ ನನಗೆ ಯೂಸುಫನ ಪರಿಮಳ ಬರುತ್ತಿದೆ. ನೀವು ನನ್ನನ್ನು ಹುಚ್ಚನೆಂದು ಭಾವಿಸದಿದ್ದರೆ!"

وَلَمَّا فَصَلَتِ ٱلۡعِيرُ قَالَ أَبُوهُمۡ إِنِّي لَأَجِدُ رِيحَ
يُوسُفَۖ لَوۡلَآ أَن تُفَنِّدُونِ ٩٤

---

95. ಅವರ ಬಳಿಯಿದ್ದವರು ಹೇಳಿದರು: "ಅಲ್ಲಾಹನಾಣೆ! ನಿಜಕ್ಕೂ ನೀವು ನಿಮ್ಮ ಹಳೇ ಭ್ರಮೆಯಲ್ಲೇ ಇದ್ದೀರಿ".

قَالُواْ تَٱللَّهِ إِنَّكَ لَفِي ضَلَٰلِكَ ٱلۡقَدِيمِ ٩٥

---

96. ನಂತರ ಸುವಾರ್ತೆ ನೀಡುವವನು ಬಂದು ಆ ಅಂಗಿಯನ್ನು ಅವರ ಮುಖದ ಮೇಲೆ ಎಸೆದಾಗ ಅವರಿಗೆ ದೃಷ್ಟಿ ಮರಳಿ ಬಂತು. ಅವರು ಹೇಳಿದರು: "ನಾನು ಅಲ್ಲಾಹನಿಂದ ನೀವು ತಿಳಿಯದಿರುವ ವಿಷಯಗಳನ್ನು ತಿಳಿದಿದ್ದೇನೆಂದು ನಿಮಗೆ ಹೇಳಲಿಲ್ಲವೇ?"

فَلَمَّآ أَن جَآءَ ٱلۡبَشِيرُ أَلۡقَىٰهُ عَلَىٰ وَجۡهِهِۦ فَٱرۡتَدَّ
بَصِيرٗاۖ قَالَ أَلَمۡ أَقُل لَّكُمۡ إِنِّيٓ أَعۡلَمُ مِنَ ٱللَّهِ
مَا لَا تَعۡلَمُونَ ٩٦

---

97. ಮಕ್ಕಳು ಹೇಳಿದರು: "ಅಪ್ಪಾ! ನಮ್ಮ ತಪ್ಪಿಗಾಗಿ ಅಲ್ಲಾಹನಲ್ಲಿ ಕ್ಷಮೆಯಾಚಿಸಿರಿ. ನಿಜಕ್ಕೂ ನಾವು ಪಾಪಿಗಳಾಗಿದ್ದೆವು."

قَالُواْ يَٰٓأَبَانَا ٱسۡتَغۡفِرۡ لَنَا ذُنُوبَنَآ إِنَّا كُنَّا
خَٰطِـِٔينَ ٩٧

---

98. ತಂದೆ ಹೇಳಿದರು: "ನಾನು ಸದ್ಯವೇ ನಿಮಗೋಸ್ಕರ ನನ್ನ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ಕ್ಷಮೆಯಾಚಿಸುತ್ತೇನೆ. ನಿಜಕ್ಕೂ ಅವನು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ."

قَالَ سَوۡفَ أَسۡتَغۡفِرُ لَكُمۡ رَبِّيٓۖ إِنَّهُۥ هُوَ ٱلۡغَفُورُ
ٱلرَّحِيمُ ٩٨

---

99. ನಂತರ ಅವರೆಲ್ಲರೂ ಯೂಸುಫರ ಬಳಿಗೆ ತೆರಳಿದಾಗ ಅವರು ತಮ್ಮ ತಂದೆ-ತಾಯಿಯನ್ನು ತಮ್ಮ ಬಳಿಗೆ ಸೆಳೆದುಕೊಂಡರು. ಅವರು ಹೇಳಿದರು: "ಅಲ್ಲಾಹು ಇಚ್ಛಿಸಿದರೆ ಸುರಕ್ಷಿತವಾಗಿ ಈಜಿಪ್ಟನ್ನು ಪ್ರವೇಶಿಸಿರಿ."

فَلَمَّا دَخَلُواْ عَلَىٰ يُوسُفَ ءَاوَىٰٓ إِلَيۡهِ أَبَوَيۡهِ
وَقَالَ ٱدۡخُلُواْ مِصۡرَ إِن شَآءَ ٱللَّهُ ءَامِنِينَ ٩٩

---

100. ಅವರು ತಮ್ಮ ತಂದೆ-ತಾಯಿಯನ್ನು ಸಿಂಹಾಸನಕ್ಕೇರಿಸಿ ಕೂರಿಸಿದರು. ಅವರೆಲ್ಲರೂ ಯೂಸುಫರ ಮುಂದೆ ಸಾಷ್ಟಾಂಗ

وَرَفَعَ أَبَوَيۡهِ عَلَى ٱلۡعَرۡشِ وَخَرُّواْ لَهُۥ سُجَّدٗاۖ
وَقَالَ يَٰٓأَبَتِ هَٰذَا تَأۡوِيلُ رُءۡيَٰيَ مِن قَبۡلُ قَدۡ

جَعَلَهَا رَبِّي حَقًّاۖ وَقَدۡ أَحۡسَنَ بِيٓ إِذۡ أَخۡرَجَنِي مِنَ ٱلسِّجۡنِ وَجَآءَ بِكُم مِّنَ ٱلۡبَدۡوِ مِنۢ بَعۡدِ أَن نَّزَغَ ٱلشَّيۡطَٰنُ بَيۡنِي وَبَيۡنَ إِخۡوَتِيٓۚ إِنَّ رَبِّي لَطِيفٞ لِّمَا يَشَآءُۚ إِنَّهُۥ هُوَ ٱلۡعَلِيمُ ٱلۡحَكِيمُ ١٠٠

ಮಾಡುತ್ತಾ ಬಿದ್ದರು. ಯೂಸುಫ್ ಹೇಳಿದರು: "ಅಪ್ಪಾಜಿ! ಇದೇ ನಾನು ಆವತ್ತು ಕಂಡ ಕನಸಿನ ವ್ಯಾಖ್ಯಾನ. ನನ್ನ ಪರಿಪಾಲಕನು (ಅಲ್ಲಾಹು) ಅದನ್ನು ನಿಜಗೊಳಿಸಿದ್ದಾನೆ. ನನ್ನನ್ನು ಕಾರಾಗೃಹದಿಂದ ಹೊರತಂದಾಗ, ಮತ್ತು ನನ್ನ ಹಾಗೂ ನನ್ನ ಸಹೋದರರ ಮಧ್ಯೆ ಶೈತಾನನು ದ್ವೇಷ ಮೂಡಿಸಿದ ನಂತರವೂ ನಿಮ್ಮನ್ನು ಮರುಭೂಮಿಯಿಂದ ಇಲ್ಲಿಗೆ ಕರೆತಂದಾಗ ಅವನು ನನಗೆ ಬಹಳ ಉಪಕಾರ ಮಾಡಿದ್ದಾನೆ. ನಿಶ್ಚಯವಾಗಿಯೂ ನನ್ನ ಪರಿಪಾಲಕನು (ಅಲ್ಲಾಹು) ಅವನು ಬಯಸುವುದನ್ನು ಬಹಳ ನಾಜೂಕಾಗಿ ನಿರ್ವಹಿಸುತ್ತಾನೆ. ನಿಜಕ್ಕೂ ಅವನು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ."

---

رَبِّ قَدۡ ءَاتَيۡتَنِي مِنَ ٱلۡمُلۡكِ وَعَلَّمۡتَنِي مِن تَأۡوِيلِ ٱلۡأَحَادِيثِۚ فَاطِرَ ٱلسَّمَٰوَٰتِ وَٱلۡأَرۡضِ أَنتَ وَلِيِّۦ فِي ٱلدُّنۡيَا وَٱلۡأٓخِرَةِۖ تَوَفَّنِي مُسۡلِمٗا وَأَلۡحِقۡنِي بِٱلصَّٰلِحِينَ ١٠١

101. "ಓ ನನ್ನ ಪರಿಪಾಲಕನೇ! ನೀನು ನನಗೆ ಸಾಮ್ರಾಜ್ಯವನ್ನು ನೀಡಿದೆ ಮತ್ತು ಕನಸಿನ ವ್ಯಾಖ್ಯಾನಗಳನ್ನು ಕಲಿಸಿಕೊಟ್ಟೆ. ಭೂಮ್ಯಾಕಾಶಗಳ ಸೃಷ್ಟಿಕರ್ತನೇ! ಇಹಲೋಕದಲ್ಲೂ ಪರಲೋಕದಲ್ಲೂ ನೀನೇ ನನ್ನ ರಕ್ಷಕ. ಮುಸ್ಲಿಮನಾಗಿರುವ ಸ್ಥಿತಿಯಲ್ಲೇ ನನ್ನ ಪ್ರಾಣವನ್ನು ವಶಪಡಿಸು ಮತ್ತು ನನ್ನನ್ನು ನೀತಿವಂತರೊಡನೆ ಸೇರಿಸು."

---

ذَٰلِكَ مِنۡ أَنۢبَآءِ ٱلۡغَيۡبِ نُوحِيهِ إِلَيۡكَۖ وَمَا كُنتَ لَدَيۡهِمۡ إِذۡ أَجۡمَعُوٓاْ أَمۡرَهُمۡ وَهُمۡ يَمۡكُرُونَ ١٠٢

102. (ಪ್ರವಾದಿಯವರೇ) ಇವೆಲ್ಲವೂ ಅದೃಶ್ಯ ಸಮಾಚಾರಗಳಲ್ಲಿ ಸೇರಿದ್ದಾಗಿವೆ. ನಾವು ನಿಮಗೆ ಇದನ್ನು ದೇವವಾಣಿಯ ಮೂಲಕ ತಿಳಿಸುತ್ತಿದ್ದೇವೆ. ಅವರು ತಮ್ಮ ಯೋಜನೆಯನ್ನು ರೂಪಿಸಿ ಒಮ್ಮತದಿಂದ ನಿರ್ಧರಿಸಿದಾಗ ನೀವು ಅವರ ಬಳಿಯಲ್ಲಿರಲಿಲ್ಲ.

---

وَمَآ أَكۡثَرُ ٱلنَّاسِ وَلَوۡ حَرَصۡتَ بِمُؤۡمِنِينَ ١٠٣

103. ನೀವು ಎಷ್ಟೇ ಹಂಬಲಿಸಿದರೂ ಜನರಲ್ಲಿ ಹೆಚ್ಚಿನವರು ಸತ್ಯವಿಶ್ವಾಸಿಗಳಾಗುವುದಿಲ್ಲ.

---

وَمَا تَسۡـَٔلُهُمۡ عَلَيۡهِ مِنۡ أَجۡرٍۚ إِنۡ هُوَ إِلَّا ذِكۡرٞ لِّلۡعَٰلَمِينَ ١٠٤

104. ನೀವು ಇದಕ್ಕಾಗಿ ಅವರೊಡನೆ ಯಾವುದೇ ಪ್ರತಿಫಲವನ್ನು ಕೇಳುವುದಿಲ್ಲ. ಇದು ಸರ್ವಲೋಕದವರಿಗೆ ಒಂದು ಉಪದೇಶ ಮಾತ್ರವಾಗಿದೆ.

---

وَكَأَيِّن مِّنۡ ءَايَةٖ فِي ٱلسَّمَٰوَٰتِ وَٱلۡأَرۡضِ يَمُرُّونَ عَلَيۡهَا وَهُمۡ عَنۡهَا مُعۡرِضُونَ ١٠٥

105. ಭೂಮ್ಯಾಕಾಶಗಳಲ್ಲಿ ಎಷ್ಟೋ ದೃಷ್ಟಾಂತಗಳಿವೆ! ಅವರು ಅವುಗಳ ಬಳಿಯಿಂದ ಮುಖ ತಿರುಗಿಸಿಕೊಂಡು (ನಿರ್ಲಕ್ಷ್ಯ ಭಾವದಿಂದ) ಹಾದುಹೋಗುತ್ತಾರೆ.

---

وَمَا يُؤۡمِنُ أَكۡثَرُهُم بِٱللَّهِ إِلَّا وَهُم مُّشۡرِكُونَ ١٠٦

106. ಅವರಲ್ಲಿ ಹೆಚ್ಚಿನವರು ಅಲ್ಲಾಹನಲ್ಲಿ ವಿಶ್ವಾಸವಿರುವವರಾಗಿದ್ದೂ ಸಹ (ಆರಾಧನೆಯಲ್ಲಿ) ಸಹಭಾಗಿತ್ವ (ಶಿರ್ಕ್) ಮಾಡುತ್ತಾರೆ.[1]

---

[1] ಅಂದರೆ ಬಹುದೇವವಿಶ್ವಾಸಿಗಳಲ್ಲಿ ಹೆಚ್ಚಿನವರು ಅಲ್ಲಾಹನ ಪ್ರಭುತ್ವದಲ್ಲಿ (ರುಬೂಬಿಯತ್) ವಿಶ್ವಾಸವಿಡುತ್ತಾರೆ. ಅಂದರೆ ಸೃಷ್ಟಿಕರ್ತ, ಪರಿಪಾಲಕ, ನಿಯಂತ್ರಕ, ಅನ್ನದಾತ, ಜೀವ ಮತ್ತು ಮರಣ ನೀಡುವವನು ಮುಂತಾದ ಎಲ್ಲವೂ ಅಲ್ಲಾಹನೆಂದು ಅವರು ವಿಶ್ವಾಸವಿಡು-ತ್ತಾರೆ. ಇದರಲ್ಲಿ ಅಲ್ಲಾಹನಿಗೆ ಯಾವುದೇ ಸಹಭಾಗಿಗಳು ಅಥವಾ ಪಾಲುದಾರರು ಇಲ್ಲವೆಂದು ಅವರು ದೃಢವಾಗಿ ವಿಶ್ವಾಸವಿಡುತ್ತಾರೆ. ಆದರೆ

107. ಅಲ್ಲಾಹನ ಶಿಕ್ಷೆಗಳಲ್ಲಿ ಒಳಪಟ್ಟ ಒಂದು ಸಾರ್ವತ್ರಿಕ ಶಿಕ್ಷೆಯು ಅವರ ಮೇಲೆರಗಲಾರದು, ಅಥವಾ ಅವರಿಗೆ ತಿಳಿಯದಂತೆಯೇ ಹಠಾತ್ತನೆ ಅಂತಿಮದಿನವು ಸಂಭವಿಸಲಾರದು ಎಂದು ಅವರು ನಿರ್ಭಯರಾಗಿದ್ದಾರೆಯೇ?

أَفَأَمِنُوٓاْ أَن تَأۡتِيَهُمۡ غَٰشِيَةٞ مِّنۡ عَذَابِ ٱللَّهِ أَوۡ
تَأۡتِيَهُمُ ٱلسَّاعَةُ بَغۡتَةٗ وَهُمۡ لَا يَشۡعُرُونَ ١٠٧

108. ಹೇಳಿರಿ: “ಇದೇ ನನ್ನ ಮಾರ್ಗ. ನಾನು ಮತ್ತು ನನ್ನ ಅನುಯಾಯಿಗಳು ಪೂರ್ಣ ಭರವಸೆಯೊಂದಿಗೆ ಅಲ್ಲಾಹನ ಕಡೆಗೆ ಕರೆಯುತ್ತಿದ್ದೇವೆ. ಅಲ್ಲಾಹು ಪರಿಶುದ್ಧನು. ನಾನು ದೇವಸಹಭಾಗಿತ್ವ (ಶಿರ್ಕ್) ಮಾಡುವವರಲ್ಲಿ ಸೇರಿದವನಲ್ಲ.”

قُلۡ هَٰذِهِۦ سَبِيلِيٓ أَدۡعُوٓاْ إِلَى ٱللَّهِۚ عَلَىٰ بَصِيرَةٍ
أَنَا۠ وَمَنِ ٱتَّبَعَنِيۖ وَسُبۡحَٰنَ ٱللَّهِ وَمَآ أَنَا۠ مِنَ
ٱلۡمُشۡرِكِينَ ١٠٨

109. ನಿಮಗಿಂತ ಮೊದಲು ನಾವು ವಿಭಿನ್ನ ಊರುಗಳಲ್ಲಿ ಎಷ್ಟು ಸಂದೇಶವಾಹಕರನ್ನು ಕಳುಹಿಸಿದ್ದೆವೋ ಅವರೆಲ್ಲರೂ ನಾವು ದೇವವಾಣಿ ನೀಡಿದ ಪುರುಷರಾಗಿದ್ದರು. ಅವರು ಭೂಮಿಯಲ್ಲಿ ಸಂಚರಿಸಿ ಅವರಿಗಿಂತ ಮೊದಲಿನ ಜನರ ಅಂತ್ಯವು ಹೇಗಿತ್ತೆಂದು ನೋಡುವುದಿಲ್ಲವೇ? ದೇವಭಯವುಳ್ಳ-ವರಿಗೆ ಪರಲೋಕ ಭವನವೇ ಅತಿಶ್ರೇಷ್ಠವಾಗಿದೆ. ಆದರೂ ನೀವು ಅರ್ಥಮಾಡಿಕೊಳ್ಳುವುದಿಲ್ಲವೇ?

وَمَآ أَرۡسَلۡنَا مِن قَبۡلِكَ إِلَّا رِجَالٗا نُّوحِيٓ
إِلَيۡهِم مِّنۡ أَهۡلِ ٱلۡقُرَىٰٓۗ أَفَلَمۡ يَسِيرُواْ فِي
ٱلۡأَرۡضِ فَيَنظُرُواْ كَيۡفَ كَانَ عَٰقِبَةُ ٱلَّذِينَ
مِن قَبۡلِهِمۡۗ وَلَدَارُ ٱلۡأٓخِرَةِ خَيۡرٞ لِّلَّذِينَ ٱتَّقَوۡاْۚ
أَفَلَا تَعۡقِلُونَ ١٠٩

110. ಎಲ್ಲಿಯವರೆಗೆಂದರೆ, ಸಂದೇಶವಾಹಕರುಗಳು ನಿರಾಶರಾಗಿ, ಜನರು ತಮ್ಮನ್ನು ಸಂಪೂರ್ಣವಾಗಿ ನಿಷೇಧಿಸಿದ್ದಾರೆಂದು ಅವರಿಗೆ ಖಾತ್ರಿಯಾದಾಗ, ನಮ್ಮ ಸಹಾಯವು ಅವರ ಬಳಿಗೆ ಬಂತು. ಆಗ ನಾವು ಇಚ್ಛಿಸುವವರು ಪಾರಾದರು. ಅಕ್ರಮವೆಸಗುವ ಜನರಿಂದ ನಮ್ಮ ಶಿಕ್ಷೆಯನ್ನು ಹಿಂದೆಗೆಯಲಾಗುವುದಿಲ್ಲ.

حَتَّىٰٓ إِذَا ٱسۡتَيۡـَٔسَ ٱلرُّسُلُ وَظَنُّوٓاْ أَنَّهُمۡ قَدۡ
كُذِبُواْ جَآءَهُمۡ نَصۡرُنَا فَنُجِّيَ مَن نَّشَآءُۖ وَلَا يُرَدُّ
بَأۡسُنَا عَنِ ٱلۡقَوۡمِ ٱلۡمُجۡرِمِينَ ١١٠

111. ಅವರ ಕಥೆಗಳಲ್ಲಿ ಬುದ್ಧಿವಂತರಿಗೆ ನೀತಿಪಾಠಗಳಿದ್ದವು. ಇದು (ಕುರ್‌ಆನ್) ಸ್ವಯಂ ರಚಿಸಲಾದ ಗ್ರಂಥವಲ್ಲ. ಬದಲಿಗೆ, ಇದು ಇದಕ್ಕಿಂತ ಮೊದಲಿನ ಗ್ರಂಥಗಳ ದೃಢೀಕರಣವಾಗಿದೆ ಮತ್ತು ಎಲ್ಲಾ ವಿಷಯಗಳ ವಿವರಣೆಯಾಗಿದೆ. ವಿಶ್ವಾಸವಿಡುವ ಜನರಿಗೆ ಇದು ಸನ್ಮಾರ್ಗ ಮತ್ತು ದಯೆಯಾಗಿದೆ.

لَقَدۡ كَانَ فِي قَصَصِهِمۡ عِبۡرَةٞ لِّأُوْلِي ٱلۡأَلۡبَٰبِۗ مَا
كَانَ حَدِيثٗا يُفۡتَرَىٰ وَلَٰكِن تَصۡدِيقَ ٱلَّذِي
بَيۡنَ يَدَيۡهِ وَتَفۡصِيلَ كُلِّ شَيۡءٖ وَهُدٗى وَرَحۡمَةٗ
لِّقَوۡمٖ يُؤۡمِنُونَ ١١١

ಆರಾಧನೆಯ ವಿಷಯದಲ್ಲಿ ಅವರು ಅಲ್ಲಾಹನೊಂದಿಗೆ ಇತರರನ್ನು ಸಹಭಾಗಿಗಳನ್ನಾಗಿ ಮಾಡುತ್ತಾರೆ.

# 13. ಅರ್ರಅ್‌ದ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಅಲಿಫ್ ಲಾಮ್ ಮೀಮ್ ರಾ. ಇವು ಗ್ರಂಥದ ವಚನಗಳು. ನಿಮಗೆ ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಏನು ಅವತೀರ್ಣ-ವಾಗಿದೆಯೋ ಅದು ಸತ್ಯವಾಗಿದೆ. ಆದರೆ ಜನರಲ್ಲಿ ಹೆಚ್ಚಿನವರು ವಿಶ್ವಾಸವಿಡುವುದಿಲ್ಲ.

الٓمٓرۚ تِلۡكَ ءَايَٰتُ ٱلۡكِتَٰبِۗ وَٱلَّذِيٓ أُنزِلَ إِلَيۡكَ مِن رَّبِّكَ ٱلۡحَقُّ وَلَٰكِنَّ أَكۡثَرَ ٱلنَّاسِ لَا يُؤۡمِنُونَ ١

2. ನೀವು ನೋಡುತ್ತಿರುವಂತೆ ಯಾವುದೇ ಸ್ಥಂಭಗಳ ಆಧಾರವಿಲ್ಲದೆ ಆಕಾಶವನ್ನು ಎತ್ತಿ ನಿಲ್ಲಿಸಿದವನೇ ಅಲ್ಲಾಹು. ನಂತರ ಅವನು ಸಿಂಹಾಸನದಲ್ಲಿ ಆರೂಢನಾದನು. ಅವನು ಸೂರ್ಯ-ಚಂದ್ರರನ್ನು ಅಧೀನಗೊಳಿಸಿದ್ದಾನೆ. ಎಲ್ಲವೂ ಒಂದು ನಿಗದಿತ ಅವಧಿಯ ತನಕ ಚಲಿಸುತ್ತಿರುವುವು. ಅವನು ಎಲ್ಲಾ ವಿಷಯಗಳನ್ನು ನಿಯಂತ್ರಿಸುತ್ತಾನೆ. ನೀವು ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಭೇಟಿಯಾಗುವ ವಿಷಯದಲ್ಲಿ ದೃಢವಿಶ್ವಾಸಿಗಳಾಗುವುದಕ್ಕಾಗಿ ಅವನು ತನ್ನ ದೃಷ್ಟಾಂತಗಳನ್ನು ಸ್ಪಷ್ಟವಾಗಿ ವಿವರಿಸಿಕೊಡುತ್ತಿದ್ದಾನೆ.

ٱللَّهُ ٱلَّذِي رَفَعَ ٱلسَّمَٰوَٰتِ بِغَيۡرِ عَمَدٖ تَرَوۡنَهَاۖ ثُمَّ ٱسۡتَوَىٰ عَلَى ٱلۡعَرۡشِۖ وَسَخَّرَ ٱلشَّمۡسَ وَٱلۡقَمَرَۖ كُلّٞ يَجۡرِي لِأَجَلٖ مُّسَمّٗىۚ يُدَبِّرُ ٱلۡأَمۡرَ يُفَصِّلُ ٱلۡأٓيَٰتِ لَعَلَّكُم بِلِقَآءِ رَبِّكُمۡ تُوقِنُونَ ٢

3. ಭೂಮಿಯನ್ನು ವಿಸ್ತರಿಸಿದವನು ಅವನೇ. ಅವನು ಅದರಲ್ಲಿ ಪರ್ವತಗಳನ್ನು ಮತ್ತು ನದಿಗಳನ್ನು ಸೃಷ್ಟಿಸಿದನು. ಎಲ್ಲಾ ವಿಧ ಹಣ್ಣುಗಳಲ್ಲೂ ಅವನು ಎರಡೆರಡು ಜೋಡಿಗಳನ್ನು ಸೃಷ್ಟಿಸಿದನು.[1] ಅವನು ರಾತ್ರಿಯನ್ನು ಹಗಲಿನ ಮೇಲೆ ಮುಚ್ಚುತ್ತಾನೆ. ಆಲೋಚಿಸುವ ಜನರಿಗೆ ಅದರಲ್ಲಿ ಖಂಡಿತ ದೃಷ್ಟಾಂತಗಳಿವೆ.

وَهُوَ ٱلَّذِي مَدَّ ٱلۡأَرۡضَ وَجَعَلَ فِيهَا رَوَٰسِيَ وَأَنۡهَٰرٗاۖ وَمِن كُلِّ ٱلثَّمَرَٰتِ جَعَلَ فِيهَا زَوۡجَيۡنِ ٱثۡنَيۡنِۖ يُغۡشِي ٱلَّيۡلَ ٱلنَّهَارَۚ إِنَّ فِي ذَٰلِكَ لَأٓيَٰتٖ لِّقَوۡمٖ يَتَفَكَّرُونَ ٣

4. ಭೂಮಿಯಲ್ಲಿ ಒಂದಕ್ಕೊಂದು ತಾಗಿಕೊಂಡಿರುವ ವಿಭಿನ್ನ ಜಮೀನುಗಳು, ದ್ರಾಕ್ಷಿ ತೋಟಗಳು, ಹೊಲಗಳು, ರೆಂಭೆಗಳಿರುವ ಮತ್ತು ರೆಂಭೆಗಳಿಲ್ಲದ ಖರ್ಜೂರ ಮರಗಳು ಇವೆ. ಇವೆಲ್ಲದ್ದಕ್ಕೂ ಒಂದೇ ನೀರನ್ನು ಉಣಿಸಲಾಗುತ್ತದೆ. ಆದರೂ ಅವುಗಳ ಹಣ್ಣುಗಳಲ್ಲಿ ಒಂದಕ್ಕೆ ಇನ್ನೊಂದಕ್ಕಿಂತ ಶ್ರೇಷ್ಠತೆಯನ್ನು ನೀಡುತ್ತೇವೆ. ಅರ್ಥಮಾಡಿಕೊಳ್ಳುವ ಜನರಿಗೆ ಅದರಲ್ಲಿ ಖಂಡಿತ ದೃಷ್ಟಾಂತಗಳಿವೆ.

وَفِي ٱلۡأَرۡضِ قِطَعٞ مُّتَجَٰوِرَٰتٞ وَجَنَّٰتٞ مِّنۡ أَعۡنَٰبٖ وَزَرۡعٞ وَنَخِيلٞ صِنۡوَانٞ وَغَيۡرُ صِنۡوَانٖ يُسۡقَىٰ بِمَآءٖ وَٰحِدٖ وَنُفَضِّلُ بَعۡضَهَا عَلَىٰ بَعۡضٖ فِي ٱلۡأُكُلِۚ إِنَّ فِي ذَٰلِكَ لَأٓيَٰتٖ لِّقَوۡمٖ يَعۡقِلُونَ ٤

5. ನಿಮಗೆ ಅಚ್ಚರಿಯಾಗುವುದಾದರೆ, ವಾಸ್ತವದಲ್ಲಿ ಅವರು

وَإِن تَعۡجَبۡ فَعَجَبٞ قَوۡلُهُمۡ أَءِذَا كُنَّا تُرَٰبًا

[1] ಇದರ ಒಂದು ಅರ್ಥ ಏನೆಂದರೆ ಅಲ್ಲಾಹು ಎಲ್ಲಾ ಹಣ್ಣುಗಳಲ್ಲೂ ಗಂಡು-ಹೆಣ್ಣುಗಳನ್ನು ಸೃಷ್ಟಿಸಿದ್ದಾನೆ. ಇನ್ನೊಂದು ಅರ್ಥವೇನೆಂದರೆ, ಅವನು ಎಲ್ಲಾ ಹಣ್ಣುಗಳನ್ನು ವಿಭಿನ್ನ ಗುಣಗಳಲ್ಲಿ ಸೃಷ್ಟಿಸಿದ್ದಾನೆ. ಉದಾಹರಣೆಗೆ, ಸಿಹಿ-ಕಹಿ, ಉಷ್ಣ-ತಂಪು, ಕಪ್ಪು-ಬಿಳಿ ಇತ್ಯಾದಿ.

ಹೇಳುವ “ನಾವು ಮಣ್ಣಾಗಿ ಬಿಟ್ಟ ಬಳಿಕ ನಮ್ಮನ್ನು ಪುನಃ ಸೃಷ್ಟಿಸಲಾಗುವುದೇ?” ಎಂಬ ಮಾತು ಹೆಚ್ಚು ಅಚ್ಚರಿದಾಯಕವಾಗಿದೆ. ಅವರೇ ಅವರ ಪರಿಪಾಲಕನನ್ನು (ಅಲ್ಲಾಹನನ್ನು) ನಿಷೇಧಿಸಿದವರು. ಅವರ ಕಂಠಗಳಲ್ಲಿ ಸಂಕೋಲೆಗಳಿವೆ. ಅವರೇ ನರಕವಾಸಿಗಳು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು.

أَءِنَّا لَفِي خَلۡقٖ جَدِيدٍۗ أُوْلَٰٓئِكَ ٱلَّذِينَ كَفَرُواْ بِرَبِّهِمۡۖ وَأُوْلَٰٓئِكَ ٱلۡأَغۡلَٰلُ فِيٓ أَعۡنَاقِهِمۡۖ وَأُوْلَٰٓئِكَ أَصۡحَٰبُ ٱلنَّارِۖ هُمۡ فِيهَا خَٰلِدُونَ ٥

6. ಅವರು ನಿಮ್ಮೊಡನೆ ಒಳಿತಿಗಿಂತ ಮೊದಲು ಕೆಡುಕನ್ನು (ಶಿಕ್ಷೆಯನ್ನು) ತರಲು ತ್ವರೆ ಮಾಡುತ್ತಾರೆ. ಮಾದರೀಯೋಗ್ಯ ಶಿಕ್ಷೆಗಳು ಅವರಿಗಿಂತ ಮೊದಲಿನ ತಲೆಮಾರುಗಳಿಗೆ ಈಗಾಗಲೇ ಸಂಭವಿಸಿಬಿಟ್ಟಿದೆ. ನಿಶ್ಚಯವಾಗಿಯೂ, ಜನರು ಅಕ್ರಮಿಗಳಾಗಿದ್ದೂ ಸಹ ನಿಮ್ಮ ಪರಿಪಾಲಕನು (ಅಲ್ಲಾಹು) ಅವರನ್ನು ಕ್ಷಮಿಸುವವನಾಗಿದ್ದಾನೆ. ನಿಶ್ಚಯವಾಗಿಯೂ, ನಿಮ್ಮ ಪರಿಪಾಲಕನು (ಅಲ್ಲಾಹು) ಅತಿಕಠೋರವಾಗಿ ಶಿಕ್ಷಿಸುವವನೂ ಆಗಿದ್ದಾನೆ.

وَيَسۡتَعۡجِلُونَكَ بِٱلسَّيِّئَةِ قَبۡلَ ٱلۡحَسَنَةِ وَقَدۡ خَلَتۡ مِن قَبۡلِهِمُ ٱلۡمَثُلَٰتُۗ وَإِنَّ رَبَّكَ لَذُو مَغۡفِرَةٖ لِّلنَّاسِ عَلَىٰ ظُلۡمِهِمۡۖ وَإِنَّ رَبَّكَ لَشَدِيدُ ٱلۡعِقَابِ ٦

7. ಸತ್ಯನಿಷೇಧಿಗಳು ಕೇಳುತ್ತಾರೆ: “ಇವನಿಗೆ ಇವನ ಪರಿಪಾಲಕನಿಂದ (ಅಲ್ಲಾಹನಿಂದ) ಒಂದು ದೃಷ್ಟಾಂತವೇಕೆ ಇಳಿಸಲಾಗಿಲ್ಲ?” ನೀವು ಮುನ್ನೆಚ್ಚರಿಕೆ ನೀಡುವವರು ಮಾತ್ರ. ಎಲ್ಲಾ ಜನರಿಗೂ ಒಬ್ಬ ಮಾರ್ಗದರ್ಶಕನಿದ್ದಾನೆ.

وَيَقُولُ ٱلَّذِينَ كَفَرُواْ لَوۡلَآ أُنزِلَ عَلَيۡهِ ءَايَةٞ مِّن رَّبِّهِۦٓۗ إِنَّمَآ أَنتَ مُنذِرٞۖ وَلِكُلِّ قَوۡمٍ هَادٍ ٧

8. ತಾಯಿ ತನ್ನ ಉದರದಲ್ಲಿ ಏನು ಹೊತ್ತಿದ್ದಾಳೆಂದು ಅಲ್ಲಾಹನಿಗೆ ಚೆನ್ನಾಗಿ ತಿಳಿದಿದೆ. ಗರ್ಭಾಶಯಗಳು ತಗ್ಗುವುದನ್ನು ಮತ್ತು ಉಬ್ಬುವುದನ್ನು ಅವನು ತಿಳಿಯುತ್ತಾನೆ. ಎಲ್ಲವೂ ಅವನ ಬಳಿ ಒಂದು ನಿರ್ಣಯದಂತೆ ಇವೆ.

ٱللَّهُ يَعۡلَمُ مَا تَحۡمِلُ كُلُّ أُنثَىٰ وَمَا تَغِيضُ ٱلۡأَرۡحَامُ وَمَا تَزۡدَادُۚ وَكُلُّ شَيۡءٍ عِندَهُۥ بِمِقۡدَارٍ ٨

9. ಅವನು ದೃಶ್ಯ-ಅದೃಶ್ಯಗಳನ್ನು ತಿಳಿದವನಾಗಿದ್ದಾನೆ. ಅವನು ಮಹಾನನು ಮತ್ತು ಅತ್ಯುನ್ನತನಾಗಿದ್ದಾನೆ.

عَٰلِمُ ٱلۡغَيۡبِ وَٱلشَّهَٰدَةِ ٱلۡكَبِيرُ ٱلۡمُتَعَالِ ٩

10. ನಿಮ್ಮಲ್ಲಿ ಮಾತನ್ನು ರಹಸ್ಯವಾಗಿ ಹೇಳುವವನು ಮತ್ತು ಅದನ್ನು ಬಹಿರಂಗವಾಗಿ ಹೇಳುವವನು, ರಾತ್ರಿಯಲ್ಲಿ ಅಡಗಿಕೊಳ್ಳುವವನು ಮತ್ತು ಹಗಲಲ್ಲಿ ನಡೆದಾಡುವವನು—ಎಲ್ಲರೂ ಅಲ್ಲಾಹನಿಗೆ ಸಂಬಂಧಿಸಿದಂತೆ ಸಮಾನರಾಗಿದ್ದಾರೆ.

سَوَآءٞ مِّنكُم مَّنۡ أَسَرَّ ٱلۡقَوۡلَ وَمَن جَهَرَ بِهِۦ وَمَنۡ هُوَ مُسۡتَخۡفِۭ بِٱلَّيۡلِ وَسَارِبُۢ بِٱلنَّهَارِ ١٠

11. ಮನುಷ್ಯನ ಮುಂಭಾಗದಲ್ಲಿ ಮತ್ತು ಹಿಂಭಾಗದಲ್ಲಿ ಅವನ ಪಹರೆಗಾರರಿದ್ದಾರೆ.[1] ಅಲ್ಲಾಹನ ಆಜ್ಞೆಯಂತೆ ಅವರು ಅವನನ್ನು ಕಾಯುತ್ತಾರೆ. ಜನರು ಸ್ವಯಂ ತಮ್ಮಲ್ಲಿ ಬದಲಾವಣೆ ತರುವ ತನಕ ಅಲ್ಲಾಹು ಅವರ ಸ್ಥಿತಿಯನ್ನು ಖಂಡಿತ

لَهُۥ مُعَقِّبَٰتٞ مِّنۢ بَيۡنِ يَدَيۡهِ وَمِنۡ خَلۡفِهِۦ يَحۡفَظُونَهُۥ مِنۡ أَمۡرِ ٱللَّهِۗ إِنَّ ٱللَّهَ لَا يُغَيِّرُ مَا بِقَوۡمٍ حَتَّىٰ يُغَيِّرُواْ مَا بِأَنفُسِهِمۡۗ وَإِذَآ أَرَادَ ٱللَّهُ

[1] ಪಹರೆಗಾರರು ಎಂದರೆ ದೇವದೂತರು.

| | | |
|---|---|---|
| | ಬದಲಾಯಿಸುವುದಿಲ್ಲ. ಯಾವುದಾದರೂ ಜನರನ್ನು ಶಿಕ್ಷಿಸಬೇಕೆಂದು ಅಲ್ಲಾಹು ಬಯಸಿದರೆ ಅದನ್ನು ತಡೆಯಲು ಯಾರಿಗೂ ಸಾಧ್ಯವಿಲ್ಲ. ಅವನ ಹೊರತು ಅವರಿಗೆ ಬೇರೆ ರಕ್ಷಕರೂ ಇಲ್ಲ. | بِقَوْمٍ سُوٓءًا فَلَا مَرَدَّ لَهُۥ ۚ وَمَا لَهُم مِّن دُونِهِۦ مِن وَالٍ ﴿١١﴾ |
| 12. | ಅವನೇ ನಿಮಗೆ ಭಯ ಮತ್ತು ನಿರೀಕ್ಷೆಯಾಗಿ ಮಿಂಚನ್ನು ತೋರಿಸುವವನು. ಅವನು ಭಾರವಾದ ಮೋಡಗಳನ್ನು ಸೃಷ್ಟಿಸುತ್ತಾನೆ. | هُوَ ٱلَّذِى يُرِيكُمُ ٱلْبَرْقَ خَوْفًا وَطَمَعًا وَيُنشِئُ ٱلسَّحَابَ ٱلثِّقَالَ ﴿١٢﴾ |
| 13. | ಸಿಡಿಲು ಅವನನ್ನು ಸ್ತುತಿಸುತ್ತಾ ಅವನ ಪರಿಶುದ್ಧತೆಯನ್ನು ಕೊಂಡಾಡುತ್ತದೆ ಮತ್ತು ದೇವದೂತರುಗಳು ಕೂಡ ಅವನ ಭಯದಿಂದ (ಅವನನ್ನು ಸ್ತುತಿಸುತ್ತಾರೆ). ಅವನು ಸಿಡಿಲುಗಳನ್ನು ಕಳುಹಿಸಿ, ಅವನು ಇಚ್ಛಿಸುವವರಿಗೆ ಅದು ಬಡಿಯುವಂತೆ ಮಾಡುತ್ತಾನೆ. ಸತ್ಯನಿಷೇಧಿಗಳು ಅಲ್ಲಾಹನ ವಿಷಯದಲ್ಲಿ ತರ್ಕಿಸುತ್ತಾರೆ. ಆದರೆ ಅಲ್ಲಾಹು ಮಹಾ ಶಕ್ತಿಶಾಲಿಯಾಗಿದ್ದಾನೆ. | وَيُسَبِّحُ ٱلرَّعْدُ بِحَمْدِهِۦ وَٱلْمَلَٰٓئِكَةُ مِنْ خِيفَتِهِۦ وَيُرْسِلُ ٱلصَّوَٰعِقَ فَيُصِيبُ بِهَا مَن يَشَآءُ وَهُمْ يُجَٰدِلُونَ فِى ٱللَّهِ وَهُوَ شَدِيدُ ٱلْمِحَالِ ﴿١٣﴾ |
| 14. | ಅವನನ್ನು ಕರೆದು ಪ್ರಾರ್ಥಿಸುವುದೇ ನಿಜವಾದ ಪ್ರಾರ್ಥನೆ. ಅವರು ಅವನನ್ನು ಬಿಟ್ಟು ಯಾರನ್ನೆಲ್ಲಾ ಕರೆದು ಪ್ರಾರ್ಥಿಸುತ್ತಾರೋ ಅವರು ಅವರ ಪ್ರಾರ್ಥನೆಗೆ ಸ್ವಲ್ಪವೂ ಉತ್ತರ ನೀಡುವುದಿಲ್ಲ. ಅವರ (ಪ್ರಾರ್ಥಿಸುವವರ) ಸ್ಥಿತಿಯು ತನ್ನ ಎರಡು ಕೈಗಳನ್ನು ದೂರದಿಂದ ನೀರಿನ ಕಡೆಗೆ ಚಾಚಿ ಅದು ತನ್ನ ಬಾಯಿಗೆ ತಲುಪಬೇಕೆಂದು ಅದರೊಡನೆ ಕೇಳುವವನಂತೆ. ಅದು ಅವನ ಬಾಯಿಗೆ ತಲುಪುವುದಿಲ್ಲ. ಸತ್ಯನಿಷೇಧಿಗಳ ಪ್ರಾರ್ಥನೆಯು ವ್ಯರ್ಥವಲ್ಲದೆ ಇನ್ನೇನೂ ಅಲ್ಲ.[1] | لَهُۥ دَعْوَةُ ٱلْحَقِّ ۖ وَٱلَّذِينَ يَدْعُونَ مِن دُونِهِۦ لَا يَسْتَجِيبُونَ لَهُم بِشَىْءٍ إِلَّا كَبَٰسِطِ كَفَّيْهِ إِلَى ٱلْمَآءِ لِيَبْلُغَ فَاهُ وَمَا هُوَ بِبَٰلِغِهِۦ ۚ وَمَا دُعَآءُ ٱلْكَٰفِرِينَ إِلَّا فِى ضَلَٰلٍ ﴿١٤﴾ |
| 15. | ಭೂಮ್ಯಾಕಾಶಗಳಲ್ಲಿರುವ ಎಲ್ಲರೂ ಸ್ವಯಂಪ್ರೇರಣೆಯಿಂದ ಅಥವಾ ಬಲವಂತವಾಗಿ ಅಲ್ಲಾಹನಿಗೆ ಸಾಷ್ಟಾಂಗ ಮಾಡುತ್ತಾರೆ. ಬೆಳಗ್ಗೆ ಮತ್ತು ಸಂಜೆ ಅವರ ನೆರಳುಗಳು ಕೂಡ (ಸಾಷ್ಟಾಂಗ ಮಾಡುತ್ತವೆ). | وَلِلَّهِ يَسْجُدُ مَن فِى ٱلسَّمَٰوَٰتِ وَٱلْأَرْضِ طَوْعًا وَكَرْهًا وَظِلَٰلُهُم بِٱلْغُدُوِّ وَٱلْءَاصَالِ ﴿١٥﴾ |
| 16. | ಕೇಳಿರಿ: “ಭೂಮ್ಯಾಕಾಶಗಳ ಪರಿಪಾಲಕ ಯಾರು?” ಹೇಳಿರಿ: “ಅಲ್ಲಾಹು.” ಕೇಳಿರಿ: “ಆದರೂ ನೀವು ಅವನನ್ನು ಬಿಟ್ಟು | قُلْ مَن رَّبُّ ٱلسَّمَٰوَٰتِ وَٱلْأَرْضِ قُلِ ٱللَّهُ ۚ قُلْ أَفَٱتَّخَذْتُم مِّن دُونِهِۦٓ أَوْلِيَآءَ لَا يَمْلِكُونَ |

[1] ಅಲ್ಲಾಹನನ್ನು ಬಿಟ್ಟು ಇತರ ದೇವರುಗಳನ್ನು ಕರೆದು ಪ್ರಾರ್ಥಿಸುವವರ ಸ್ಥಿತಿಯು ನೀರಿನ ಕಡೆಗೆ ತನ್ನ ಎರಡು ಕೈಗಳನ್ನು ಚಾಚಿ ಅದು ತನ್ನ ಬಾಯಿಗೆ ಬರಬೇಕೆಂದು ಬೇಡಿಕೊಳ್ಳುವವನಂತೆ. ನೀರಿಗೆ ಈತನ ಬೇಡಿಕೆಯೇನೆಂದು ತಿಳಿದಿಲ್ಲ. ಅವನು ತನ್ನೊಡನೆ ಬಾಯಿಗೆ ತಲುಪಬೇಕೆಂದು ಬೇಡುತ್ತಿದ್ದಾನೆಂದೂ ಅದಕ್ಕೆ ತಿಳಿದಿಲ್ಲ. ಅವನ ಬಾಯಿಗೆ ತಲುಪುವ ಶಕ್ತಿಯೂ ಅದಕ್ಕಿಲ್ಲ. ಅದೇ ರೀತಿ ಇವರು ಕರೆದು ಪ್ರಾರ್ಥಿಸುತ್ತಿರುವ ದೇವರುಗಳಿಗೂ ಇವರು ತಮ್ಮನ್ನು ಕರೆದು ಪ್ರಾರ್ಥಿಸುತ್ತಿದ್ದಾರೆಂದು ತಿಳಿದಿಲ್ಲ. ಅವರ ಬೇಡಿಕೆಯೇನೆಂದೂ ತಿಳಿದಿಲ್ಲ. ಆ ಬೇಡಿಕೆಯನ್ನು ಈಡೇರಿಸಿಕೊಡುವ ಶಕ್ತಿಯೂ ಅವರಿಗಿಲ್ಲ.

ಸ್ವಯಂ ಉಪಕಾರ ಅಥವಾ ತೊಂದರೆ ಮಾಡಲು ಕೂಡ ಸಾಧ್ಯ-ವಿಲ್ಲದವರನ್ನು ರಕ್ಷಕರಾಗಿ ಸ್ವೀಕರಿಸಿದ್ದೀರಾ?" ಕೇಳಿರಿ: "ಕಣ್ಣು ಕಾಣದವನು ಮತ್ತು ಕಣ್ಣು ಕಾಣುವವನು ಸಮಾನರಾಗಲು ಸಾಧ್ಯವೇ? ಅಂಧಕಾರಗಳು ಮತ್ತು ಬೆಳಕು ಸಮಾನವಾಗಲು ಸಾಧ್ಯವೇ? ಇವರು ಅಲ್ಲಾಹನೊಂದಿಗೆ ಸಹಭಾಗಿಗಳಾಗಿ ಮಾಡಿದ ಆ ದೇವರುಗಳು ಕೂಡ ಅಲ್ಲಾಹು ಸೃಷ್ಟಿಸುವಂತೆಯೇ ಸೃಷ್ಟಿಸಿ, ಇವರಿಗೆ (ಎರಡೂ ಕಡೆಯ) ಸೃಷ್ಟಿಗಳು ಪರಸ್ಪರ ಸಮಾನವಾಗಿ ಕಾಣುತ್ತಿದೆಯೇ?"[1] ಹೇಳಿರಿ: "ಅಲ್ಲಾಹನೇ ಎಲ್ಲಾ ಸೃಷ್ಟಿಗಳ ಸೃಷ್ಟಿಕರ್ತ. ಅವನು ಏಕೈಕನು ಮತ್ತು ಮಹಾ ಶಕ್ತಿಶಾಲಿಯಾಗಿದ್ದಾನೆ."

لِأَنفُسِهِمۡ نَفۡعٗا وَلَا ضَرّٗاۚ قُلۡ هَلۡ يَسۡتَوِي
ٱلۡأَعۡمَىٰ وَٱلۡبَصِيرُ أَمۡ هَلۡ تَسۡتَوِي ٱلظُّلُمَٰتُ
وَٱلنُّورُۗ أَمۡ جَعَلُواْ لِلَّهِ شُرَكَآءَ خَلَقُواْ كَخَلۡقِهِۦ
فَتَشَٰبَهَ ٱلۡخَلۡقُ عَلَيۡهِمۡۚ قُلِ ٱللَّهُ خَٰلِقُ كُلِّ شَيۡءٖ
وَهُوَ ٱلۡوَٰحِدُ ٱلۡقَهَّٰرُ ١٦

---

17. ಅವನು ಆಕಾಶದಿಂದ ಮಳೆಯನ್ನು ಸುರಿಸಿದನು. ನಂತರ ಕಣಿವೆಗಳು ತಮ್ಮ ಸಾಮರ್ಥ್ಯಕ್ಕೆ ಅನುಗುಣವಾಗಿ ತುಂಬಿ ಹರಿದವು. ಆಗ ನೀರಿನ ಮೇಲಕ್ಕೆದ್ದು ಬರುವ ನೊರೆಗಳನ್ನು ಪ್ರವಾಹವು ಹೊತ್ತು ಹರಿಯುತ್ತದೆ. ಅವರು ಆಭರಣಗಳನ್ನು ಅಥವಾ ಉಪಕರಣಗಳನ್ನು ತಯಾರಿಸಲು ಬೆಂಕಿಗೆ ಹಾಕಿ ಕಾಯಿಸುವ ಲೋಹಗಳಿಂದಲೂ ಇದರಂತಹ ನೊರೆಗಳು ಬರುತ್ತವೆ. ಈ ರೀತಿಯಲ್ಲಿ ಅಲ್ಲಾಹು ಸತ್ಯ ಮತ್ತು ಅಸತ್ಯಕ್ಕೆ ಉದಾಹರಣೆ ಕೊಡುತ್ತಾನೆ. ನೊರೆಗಳು ಆರಿ ಮಾಯವಾಗುತ್ತವೆ. ಮನುಷ್ಯರಿಗೆ ಉಪಕಾರವಾಗುವ ವಿಷಯಗಳು ಭೂಮಿಯಲ್ಲಿ ಸ್ಥಿರವಾಗಿ ನಿಲ್ಲುತ್ತವೆ. ಈ ರೀತಿ ಅಲ್ಲಾಹು ಉದಾರಹಣೆಗಳನ್ನು ತಿಳಿಸುತ್ತಾನೆ.[2]

أَنزَلَ مِنَ ٱلسَّمَآءِ مَآءٗ فَسَالَتۡ أَوۡدِيَةُۢ بِقَدَرِهَا
فَٱحۡتَمَلَ ٱلسَّيۡلُ زَبَدٗا رَّابِيٗاۖ وَمِمَّا يُوقِدُونَ
عَلَيۡهِ فِي ٱلنَّارِ ٱبۡتِغَآءَ حِلۡيَةٍ أَوۡ مَتَٰعٖ زَبَدٞ
مِّثۡلُهُۥۚ كَذَٰلِكَ يَضۡرِبُ ٱللَّهُ ٱلۡحَقَّ وَٱلۡبَٰطِلَۚ فَأَمَّا
ٱلزَّبَدُ فَيَذۡهَبُ جُفَآءٗۖ وَأَمَّا مَا يَنفَعُ ٱلنَّاسَ
فَيَمۡكُثُ فِي ٱلۡأَرۡضِۚ كَذَٰلِكَ يَضۡرِبُ ٱللَّهُ
ٱلۡأَمۡثَالَ ١٧

---

18. ತಮ್ಮ ಪರಿಪಾಲಕನ (ಅಲ್ಲಾಹನ) ಕರೆಗೆ ಉತ್ತರ ನೀಡಿದವರಿಗೆ ಅತಿಶ್ರೇಷ್ಠ ಪ್ರತಿಫಲವಿದೆ. ಅವನ ಕರೆಗೆ ಉತ್ತರ ಕೊಡದವರು ಯಾರೋ—ಅವರ ವಶದಲ್ಲಿ ಭೂಮಿಯಲ್ಲಿರುವ ಎಲ್ಲವೂ

لِلَّذِينَ ٱسۡتَجَابُواْ لِرَبِّهِمُ ٱلۡحُسۡنَىٰۚ وَٱلَّذِينَ لَمۡ
يَسۡتَجِيبُواْ لَهُۥ لَوۡ أَنَّ لَهُم مَّا فِي ٱلۡأَرۡضِ جَمِيعٗا

---

[1] ಸೃಷ್ಟಿಕರ್ತನು ಏಕೈಕ ದೇವನಾದ ಅಲ್ಲಾಹು ಮಾತ್ರ. ಇದನ್ನು ಬಹುದೇವವಿಶ್ವಾಸಿಗಳು ಕೂಡ ಒಪ್ಪಿಕೊಳ್ಳುತ್ತಾರೆ. ಒಂದು ವೇಳೆ ಅಲ್ಲಾಹನ ಹೊರತಾಗಿ ಬೇರೆ ಸೃಷ್ಟಿಕರ್ತನು ಇರುತ್ತಿದ್ದರೆ, ಇಬ್ಬರ ಸೃಷ್ಟಿಗಳು ಬೇರೆ ಬೇರೆಯಾಗಿಯೇ ಇರುತ್ತಿದ್ದವು. ಜಗತ್ತಿನಲ್ಲಿರುವ ಸೃಷ್ಟಿಗಳಲ್ಲಿ ಇಂತಹ ಯಾವುದೇ ವಿರೋಧಾಭಾಸ ನಮಗೆ ಕಂಡುಬರುವುದಿಲ್ಲವಾದ್ದರಿಂದ ಇಬ್ಬರು ಸೃಷ್ಟಿಕರ್ತರೂ ಸ್ವಲ್ಪವೂ ವ್ಯತ್ಯಾಸವಿಲ್ಲದೆ ಒಂದೇ ರೀತಿಯಲ್ಲಿ ಸೃಷ್ಟಿಸುತ್ತಿದ್ದಾರೆಂದು ಹೇಳಬೇಕಾಗುತ್ತದೆ. ಇದು ಅಸಂಭವ್ಯವಾಗಿದೆ.

[2] ನೀರು ಹರಿಯುವಾಗ ಅದರ ಮೇಲೆ ನೊರೆಗಳು ಉಂಟಾಗುತ್ತವೆ. ಈ ನೊರೆಗಳು ಶಾಶ್ವತವಾಗಿ ಉಳಿಯುವುದಿಲ್ಲ. ಹಾಗೆಯೇ ಆಭರಣಗಳ-ನ್ನು ತಯಾರಿಸಲು ಚಿನ್ನ-ಬೆಳ್ಳಿಗಳನ್ನು ಅಥವಾ ಉಪಕರಣಗಳನ್ನು ತಯಾರಿಸಲು ಹಿತ್ತಾಳೆ-ಕಂಚುಗಳನ್ನು ಕಾಯಿಸುವಾಗ ಅವುಗಳಿಂದಲೂ ನೊರೆಗಳು ಏಳುತ್ತವೆ. ಇವು ಕೂಡ ಶಾಶ್ವತವಾಗಿ ಉಳಿಯುವುದಿಲ್ಲ. ಇವುಗಳಿಂದ ಮನುಷ್ಯರಿಗೆ ಪ್ರಯೋಜನವೂ ಇಲ್ಲ. ಆದರೆ ನೀರು, ಚಿನ್ನ, ಬೆಳ್ಳಿ, ಹಿತ್ತಾಳೆ, ಕಂಚು ಮೊದಲಾದವುಗಳು ಬಾಕಿಯುಳಿಯುತ್ತವೆ ಮತ್ತು ಅವರು ಮನುಷ್ಯರಿಗೆ ಪ್ರಯೋಜನಕಾರಿಯಾಗಿವೆ. ಅಸತ್ಯವು ನೊರೆಯಂತೆ, ಅದು ಶಾಶ್ವತವಾಗಿ ಉಳಿಯುವುದಿಲ್ಲ. ಸತ್ಯವು ನೀರು, ಚಿನ್ನ, ಬೆಳ್ಳಿ ಮುಂತಾದವುಗಳಂತೆ, ಅವು ಶಾಶ್ವತವಾಗಿ ಉಳಿಯುತ್ತವೆ ಮತ್ತು ಅವುಗಳಿಂದ ಮನುಷ್ಯರಿಗೆ ಪ್ರಯೋಜನಗಳಿವೆ.

ಮತ್ತು ಅದರೊಂದಿಗೆ ಅಷ್ಟೇ ಬೇರೆಯೂ ಇದ್ದರೂ ಅವರು (ತಮ್ಮ ರಕ್ಷಣೆಗಾಗಿ) ಅವೆಲ್ಲವನ್ನೂ ಪರಿಹಾರವಾಗಿ ನೀಡುತ್ತಿದ್ದರು! ಅವರಿಗೇ ಅತಿಕೆಟ್ಟ ವಿಚಾರಣೆಯಿರುವುದು. ಅವರ ವಾಸಸ್ಥಳವು ನರಕವಾಗಿದೆ. ಅದು ಬಹಳ ನಿಕೃಷ್ಟ ವಾಸ್ತವ್ಯವಾಗಿದೆ.

وَمِثْلَهُۥ مَعَهُۥ لَٱفْتَدَوْا۟ بِهِۦٓ ۚ أُو۟لَـٰٓئِكَ لَهُمْ سُوٓءُ ٱلْحِسَابِ وَمَأْوَىٰهُمْ جَهَنَّمُ ۖ وَبِئْسَ ٱلْمِهَادُ ١٨

---

19. ನಿಮಗೆ ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಅವತೀರ್ಣವಾದ ಸಂದೇಶವು ಸತ್ಯವೆಂದು ತಿಳಿದವನು ಕಣ್ಣು ಕಾಣದ ವ್ಯಕ್ತಿಯಂತೆಯೇ? ಬುದ್ಧಿವಂತರು ಮಾತ್ರ ಉಪದೇಶವನ್ನು ಸ್ವೀಕರಿಸುತ್ತಾರೆ.

أَفَمَن يَعْلَمُ أَنَّمَآ أُنزِلَ إِلَيْكَ مِن رَّبِّكَ ٱلْحَقُّ كَمَنْ هُوَ أَعْمَىٰٓ ۚ إِنَّمَا يَتَذَكَّرُ أُو۟لُوا۟ ٱلْأَلْبَـٰبِ ١٩

---

20. ಅಲ್ಲಾಹನ ಕರಾರುಗಳನ್ನು ನೆರವೇರಿಸುವವರು ಮತ್ತು ಒಪ್ಪಂದಗಳನ್ನು ಮುರಿಯದವರು,

ٱلَّذِينَ يُوفُونَ بِعَهْدِ ٱللَّهِ وَلَا يَنقُضُونَ ٱلْمِيثَـٰقَ ٢٠

---

21. ಅಲ್ಲಾಹು ಜೋಡಿಸಲು ಆಜ್ಞಾಪಿಸಿದ್ದನ್ನು ಜೋಡಿಸುವವರು, ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಭಯಪಡುವವರು ಮತ್ತು ಕೆಟ್ಟ ವಿಚಾರಣೆಯನ್ನು ಹೆದರುವವರು,

وَٱلَّذِينَ يَصِلُونَ مَآ أَمَرَ ٱللَّهُ بِهِۦٓ أَن يُوصَلَ وَيَخْشَوْنَ رَبَّهُمْ وَيَخَافُونَ سُوٓءَ ٱلْحِسَابِ ٢١

---

22. ತಮ್ಮ ಪರಿಪಾಲಕನ (ಅಲ್ಲಾಹನ) ಸಂಪ್ರೀತಿಗಾಗಿ ತಾಳ್ಮೆ ವಹಿಸುವವರು, ನಮಾಝ್ ಸಂಸ್ಥಾಪಿಸುವವರು, ನಾವು ನೀಡಿದ ಧನದಿಂದ ರಹಸ್ಯವಾಗಿ ಮತ್ತು ಬಹಿರಂಗವಾಗಿ ಖರ್ಚು ಮಾಡುವವರು ಮತ್ತು ಒಳಿತು ಮಾಡುವ ಮೂಲಕ ಕೆಡುಕನ್ನು ತಡೆಯುವವರು. ಪರಲೋಕ ಭವನವಿರುವುದು ಇಂತಹವರಿಗೇ ಆಗಿದೆ.

وَٱلَّذِينَ صَبَرُوا۟ ٱبْتِغَآءَ وَجْهِ رَبِّهِمْ وَأَقَامُوا۟ ٱلصَّلَوٰةَ وَأَنفَقُوا۟ مِمَّا رَزَقْنَـٰهُمْ سِرًّا وَعَلَانِيَةً وَيَدْرَءُونَ بِٱلْحَسَنَةِ ٱلسَّيِّئَةَ أُو۟لَـٰٓئِكَ لَهُمْ عُقْبَى ٱلدَّارِ ٢٢

---

23. (ಅಂದರೆ) ಶಾಶ್ವತ ವಾಸ್ತವ್ಯದ ಸ್ವರ್ಗೋದ್ಯಾನಗಳು! ಅವರು ಅದನ್ನು ಪ್ರವೇಶಿಸುವರು. ಅವರ ಪೂರ್ವಜರು, ಪತ್ನಿಯರು ಮತ್ತು ಮಕ್ಕಳಲ್ಲಿ ನೀತಿವಂತರಾಗಿರುವವರು ಕೂಡ (ಅದನ್ನು ಪ್ರವೇಶಿಸುವರು). ದೇವದೂತರುಗಳು ಎಲ್ಲಾ ದ್ವಾರಗಳಿಂದಲೂ ಅವರ ಬಳಿಗೆ ಬರುವರು.

جَنَّـٰتُ عَدْنٍ يَدْخُلُونَهَا وَمَن صَلَحَ مِنْ ءَابَآئِهِمْ وَأَزْوَٰجِهِمْ وَذُرِّيَّـٰتِهِمْ ۖ وَٱلْمَلَـٰٓئِكَةُ يَدْخُلُونَ عَلَيْهِم مِّن كُلِّ بَابٍ ٢٣

---

24. (ದೇವದೂತರುಗಳು ಹೇಳುವರು): “ನಿಮಗೆ ಶಾಂತಿಯಿರಲಿ! ಇದು ನಿಮ್ಮ ತಾಳ್ಮೆಗೆ ಪ್ರತಿಫಲವಾಗಿದೆ.” ಆ ಪರಲೋಕ ಭವನವು ಬಹಳ ಉತ್ತಮವಾಗಿದೆ.

سَلَـٰمٌ عَلَيْكُم بِمَا صَبَرْتُمْ ۚ فَنِعْمَ عُقْبَى ٱلدَّارِ ٢٤

---

25. ಅಲ್ಲಾಹನ ಕರಾರನ್ನು ಅದು ಸದೃಢವಾದ ಬಳಿಕವೂ ಮುರಿಯುವವರು, ಅಲ್ಲಾಹು ಜೋಡಿಸಲು ಆದೇಶಿಸಿದ್ದನ್ನು ಕಡಿಯುವವರು ಮತ್ತು ಭೂಮಿಯಲ್ಲಿ ಕಿಡಿಗೇಡಿತನ

وَٱلَّذِينَ يَنقُضُونَ عَهْدَ ٱللَّهِ مِنۢ بَعْدِ مِيثَـٰقِهِۦ وَيَقْطَعُونَ مَآ أَمَرَ ٱللَّهُ بِهِۦٓ أَن يُوصَلَ وَيُفْسِدُونَ فِى ٱلْأَرْضِ ۙ أُو۟لَـٰٓئِكَ لَهُمُ ٱللَّعْنَةُ

ಮಾಡುವವರು ಯಾರೋ—ಅವರಿಗೆ ಶಾಪವಿದೆ. ಅವರಿಗೆ ಕೆಟ್ಟ ಭವನವಿದೆ.

وَلَهُمْ سُوٓءُ ٱلدَّارِ ٢٥

---

26. ಅಲ್ಲಾಹು ಅವನು ಇಚ್ಛಿಸುವವರಿಗೆ ಉಪಜೀವನವನ್ನು ವಿಶಾಲಗೊಳಿಸುತ್ತಾನೆ ಮತ್ತು (ಅವನು ಇಚ್ಛಿಸುವವರಿಗೆ) ಕುಗ್ಗಿಸುತ್ತಾನೆ. ಅವರು ಇಹಲೋಕ ಜೀವನವನ್ನು ಆನಂದಿಸುತ್ತಾರೆ. ಪರಲೋಕಕ್ಕೆ ಹೋಲಿಸಿದರೆ ಇಹಲೋಕ ಜೀವನವು ಒಂದು (ತಾತ್ಕಾಲಿಕ) ಆನಂದ ಮಾತ್ರವಾಗಿದೆ.

ٱللَّهُ يَبْسُطُ ٱلرِّزْقَ لِمَن يَشَآءُ وَيَقْدِرُ ۚ وَفَرِحُوا۟
بِٱلْحَيَوٰةِ ٱلدُّنْيَا وَمَا ٱلْحَيَوٰةُ ٱلدُّنْيَا فِى ٱلْـَٔاخِرَةِ
إِلَّا مَتَـٰعٌ ٢٦

---

27. ಸತ್ಯನಿಷೇಧಿಗಳು ಕೇಳುತ್ತಾರೆ: “ಇವನಿಗೆ ಇವನ ಪರಿಪಾಲಕನಿಂದ (ಅಲ್ಲಾಹನಿಂದ) ಒಂದು ದೃಷ್ಟಾಂತವೇಕೆ ಇಳಿಸಲಾಗಿಲ್ಲ?” ಹೇಳಿರಿ: “ಅಲ್ಲಾಹು ಅವನು ಇಚ್ಛಿಸುವವರನ್ನು ದಾರಿತಪ್ಪಿಸುತ್ತಾನೆ ಮತ್ತು ಅವನ ಕಡೆಗೆ ತಿರುಗಿದವರಿಗೆ ಸನ್ಮಾರ್ಗವನ್ನು ತೋರಿಸುತ್ತಾನೆ.”

وَيَقُولُ ٱلَّذِينَ كَفَرُوا۟ لَوْلَآ أُنزِلَ عَلَيْهِ ءَايَةٌ
مِّن رَّبِّهِۦ ۗ قُلْ إِنَّ ٱللَّهَ يُضِلُّ مَن يَشَآءُ وَيَهْدِىٓ
إِلَيْهِ مَنْ أَنَابَ ٢٧

---

28. ಸತ್ಯವಿಶ್ವಾಸಿಗಳು ಮತ್ತು ಅಲ್ಲಾಹನ ಸ್ಮರಣೆಯಿಂದ ಹೃದಯಗಳು ಶಾಂತವಾಗುವವರು. ತಿಳಿಯಿರಿ! ಅಲ್ಲಾಹನ ಸ್ಮರಣೆಯಿಂದಲೇ ಹೃದಯಗಳು ಶಾಂತವಾಗುತ್ತವೆ.

ٱلَّذِينَ ءَامَنُوا۟ وَتَطْمَئِنُّ قُلُوبُهُم بِذِكْرِ ٱللَّهِ ۗ أَلَا
بِذِكْرِ ٱللَّهِ تَطْمَئِنُّ ٱلْقُلُوبُ ٢٨

---

29. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ—ಅವರಿಗೆ ಮಂಗಳಮಯ ಸ್ಥಿತಿಯಿದೆ; ಅತ್ಯುತ್ತಮ ವಾಸ್ತವ್ಯವೂ ಇದೆ.

ٱلَّذِينَ ءَامَنُوا۟ وَعَمِلُوا۟ ٱلصَّـٰلِحَـٰتِ طُوبَىٰ لَهُمْ
وَحُسْنُ مَـَٔابٍ ٢٩

---

30. ಈ ರೀತಿಯಲ್ಲಿ ನಾವು ನಿಮ್ಮನ್ನು ಒಂದು ಸಮುದಾಯಕ್ಕೆ ಸಂದೇಶವಾಹಕರನ್ನಾಗಿ ಕಳುಹಿಸಿದ್ದೇವೆ—ಅದಕ್ಕಿಂತ ಮೊದಲು ಅನೇಕ ಸಮುದಾಯಗಳು ಕಳೆದು ಹೋಗಿವೆ—ನಾವು ನಿಮಗೆ ನೀಡಿದ ದೇವವಾಣಿಗಳನ್ನು ಅವರಿಗೆ ಓದಿಕೊಡುವುದಕ್ಕಾಗಿ. ಅವರು ಪರಮ ದಯಾಮಯನನ್ನು (ಅಲ್ಲಾಹನನ್ನು) ನಿಷೇಧಿಸುತ್ತಾರೆ. ಹೇಳಿರಿ: “ಅವನೇ ನನ್ನ ಪರಿಪಾಲಕನು. ಅವನ ಹೊರತು ಆರಾಧಿಸಲು ಅರ್ಹರಾದ ಬೇರೆ ದೇವರಿಲ್ಲ. ನಾನು ಅವನಲ್ಲಿ ಭರವಸೆಯಿಟ್ಟಿದ್ದೇನೆ. ನಾನು ಮರಳಿಹೋಗುವುದು ಅವನ ಬಳಿಗೇ ಆಗಿದೆ.”

كَذَٰلِكَ أَرْسَلْنَـٰكَ فِىٓ أُمَّةٍ قَدْ خَلَتْ مِن قَبْلِهَآ
أُمَمٌ لِّتَتْلُوَا۟ عَلَيْهِمُ ٱلَّذِىٓ أَوْحَيْنَآ إِلَيْكَ وَهُمْ
يَكْفُرُونَ بِٱلرَّحْمَـٰنِ ۚ قُلْ هُوَ رَبِّى لَآ إِلَـٰهَ إِلَّا هُوَ
عَلَيْهِ تَوَكَّلْتُ وَإِلَيْهِ مَتَابِ ٣٠

---

31. ಯಾವುದೇ ಕುರ್‌ಆನಿನ (ದೈವಿಕ ಗ್ರಂಥದ) ಮೂಲಕ ಬೆಟ್ಟಗಳನ್ನು ಚಲಿಸುವಂತೆ, ಭೂಮಿ ನುಚ್ಚುನೂರಾಗುವಂತೆ, ಅಥವಾ ಸತ್ತವನು ಮಾತನಾಡುವಂತೆ ಮಾಡಲಾದರೂ (ಅವರು ಸತ್ಯವಿಶ್ವಾಸಿಗಳಾಗಲಾರರು). ವಾಸ್ತವವಾಗಿ, ಎಲ್ಲವೂ ಅಲ್ಲಾಹನ

وَلَوْ أَنَّ قُرْءَانًا سُيِّرَتْ بِهِ ٱلْجِبَالُ أَوْ قُطِّعَتْ بِهِ
ٱلْأَرْضُ أَوْ كُلِّمَ بِهِ ٱلْمَوْتَىٰ ۗ بَل لِّلَّهِ ٱلْأَمْرُ جَمِيعًا ۗ
أَفَلَمْ يَا۟يْـَٔسِ ٱلَّذِينَ ءَامَنُوٓا۟ أَن لَّوْ يَشَآءُ ٱللَّهُ

لَهَدَى ٱلنَّاسَ جَمِيعًاۗ وَلَا يَزَالُ ٱلَّذِينَ كَفَرُواْ تُصِيبُهُم بِمَا صَنَعُواْ قَارِعَةٌ أَوۡ تَحُلُّ قَرِيبًا مِّن دَارِهِمۡ حَتَّىٰ يَأۡتِيَ وَعۡدُ ٱللَّهِۚ إِنَّ ٱللَّهَ لَا يُخۡلِفُ ٱلۡمِيعَادَ ٣١

ನಿಯಂತ್ರಣದಲ್ಲಿವೆ. ಅಲ್ಲಾಹು ಇಚ್ಛಿಸುತ್ತಿದ್ದರೆ ಮನುಷ್ಯರೆಲ್ಲರನ್ನೂ ಅವನು ಸನ್ಮಾರ್ಗದಲ್ಲಿ ಸೇರಿಸುತ್ತಿದ್ದನೆಂದು ಸತ್ಯವಿಶ್ವಾಸಿಗಳಿಗೆ ತಿಳಿದಿಲ್ಲವೇ? ಸತ್ಯನಿಷೇಧಿಗಳಿಗೆ ಅವರು ಮಾಡಿದ ದುಷ್ಕರ್ಮಗಳ ನಿಮಿತ್ತ ಯಾವುದಾದರೂ ಅನಾಹುತಗಳು ಸಂಭವಿಸುತ್ತಲೇ ಇರುತ್ತವೆ. ಅಥವಾ ಅವರ ಮನೆಗಳ ಸಮೀಪವೇ ಅದು ಎರಗಬಹುದು. ಎಲ್ಲಿಯವರೆಗೆಂದರೆ, ಅಲ್ಲಾಹನ ವಾಗ್ದಾನವು ಬರುವ ತನಕ. ನಿಶ್ಚಯವಾಗಿಯೂ ಅಲ್ಲಾಹು ವಾಗ್ದಾನಗಳನ್ನು ಉಲ್ಲಂಘಿಸುವುದಿಲ್ಲ.

---

وَلَقَدِ ٱسۡتُهۡزِئَ بِرُسُلٖ مِّن قَبۡلِكَ فَأَمۡلَيۡتُ لِلَّذِينَ كَفَرُواْ ثُمَّ أَخَذۡتُهُمۡۖ فَكَيۡفَ كَانَ عِقَابِ ٣٢

32. ನಿಮಗಿಂತ ಮೊದಲು ಕೂಡ ಸಂದೇಶವಾಹಕರುಗಳು ಅಪಹಾಸ್ಯಕ್ಕೆ ಗುರಿಯಾಗಿದ್ದಾರೆ. ಆಗಲೂ ನಾನು ಸತ್ಯನಿಷೇಧಿ-ಗಳಿಗೆ ಕಾಲಾವಕಾಶ ನೀಡಿದ್ದೆ. ನಂತರ ಅವರನ್ನು ಹಿಡಿದು ಬಿಟ್ಟೆ. ಆಗ ನನ್ನ ಶಿಕ್ಷೆ ಹೇಗಿತ್ತು?

---

أَفَمَنۡ هُوَ قَآئِمٌ عَلَىٰ كُلِّ نَفۡسِۭ بِمَا كَسَبَتۡۗ وَجَعَلُواْ لِلَّهِ شُرَكَآءَ قُلۡ سَمُّوهُمۡۚ أَمۡ تُنَبِّـُٔونَهُۥ بِمَا لَا يَعۡلَمُ فِي ٱلۡأَرۡضِ أَم بِظَٰهِرٖ مِّنَ ٱلۡقَوۡلِۗ بَلۡ زُيِّنَ لِلَّذِينَ كَفَرُواْ مَكۡرُهُمۡ وَصُدُّواْ عَنِ ٱلسَّبِيلِۗ وَمَن يُضۡلِلِ ٱللَّهُ فَمَا لَهُۥ مِنۡ هَادٖ ٣٣

33. ಪ್ರತಿಯೊಬ್ಬ ಮನುಷ್ಯನು ಮಾಡಿದ ಕರ್ಮಗಳ ಮೇಲ್ನೋಟ ವಹಿಸುವ ಅಲ್ಲಾಹು (ಏನೂ ತಿಳಿಯದವನೇ?) ಅವರು (ಇತರ ದೇವರುಗಳನ್ನು) ಅಲ್ಲಾಹನಿಗೆ ಸಹಭಾಗಿಗಳಾಗಿ ಮಾಡಿದರು. ಹೇಳಿರಿ: “ಅವರ ಹೆಸರನ್ನು ಹೇಳಿರಿ. ಭೂಮಿಯಲ್ಲಿ ಅಲ್ಲಾಹನಿಗೆ ತಿಳಿಯದಿರುವ ವಿಷಯವನ್ನು ನೀವು ಅವನಿಗೆ ತಿಳಿಸುತ್ತಿದ್ದೀರಾ? ಅಥವಾ ನೀವು ಕೇವಲ ಊಹಿಸಿ ಹಾಗೆ ಹೇಳು-ತ್ತಿದ್ದೀರಾ?”[1] ಅಲ್ಲ, ವಾಸ್ತವವಾಗಿ ಸತ್ಯನಿಷೇಧಿಗಳಿಗೆ ಅವರ ತಂತ್ರಗಳನ್ನು ಆಕರ್ಷಕವಾಗಿ ತೋರಿಸಲಾಗಿದೆ ಮತ್ತು ಅವರನ್ನು ಸತ್ಯಮಾರ್ಗದಿಂದ ತಡೆಯಲಾಗಿದೆ. ಅಲ್ಲಾಹು ಯಾರನ್ನು ದಾರಿ-ತಪ್ಪಿಸುತ್ತಾನೋ ಅವನಿಗೆ ದಾರಿ ತೋರಿಸುವವರು ಯಾರೂ ಇಲ್ಲ.

---

لَّهُمۡ عَذَابٞ فِي ٱلۡحَيَوٰةِ ٱلدُّنۡيَاۖ وَلَعَذَابُ ٱلۡأٓخِرَةِ أَشَقُّۖ وَمَا لَهُم مِّنَ ٱللَّهِ مِن وَاقٖ ٣٤

34. ಅವರಿಗೆ ಇಹಲೋಕದಲ್ಲೂ ಶಿಕ್ಷೆಯಿದೆ. ಪರಲೋಕದ ಶಿಕ್ಷೆಯಂತೂ ಅತಿಕಠೋರವಾಗಿದೆ. ಅವರನ್ನು ಅಲ್ಲಾಹನ ಶಿಕ್ಷೆಯಿಂದ ಕಾಪಾಡುವವರು ಯಾರೂ ಇಲ್ಲ.

---

۞مَّثَلُ ٱلۡجَنَّةِ ٱلَّتِي وُعِدَ ٱلۡمُتَّقُونَۖ تَجۡرِي مِن تَحۡتِهَا ٱلۡأَنۡهَٰرُۖ أُكُلُهَا دَآئِمٞ وَظِلُّهَاۚ تِلۡكَ عُقۡبَى ٱلَّذِينَ ٱتَّقَواْۖ وَّعُقۡبَى ٱلۡكَٰفِرِينَ ٱلنَّارُ ٣٥

35. ದೇವಭಯವುಳ್ಳವರಿಗೆ ವಾಗ್ದಾನ ಮಾಡಲಾದ ಸ್ವರ್ಗವು ಹೇಗಿದೆಯೆಂದರೆ, ಅದರ ತಳಭಾಗದಲ್ಲಿ ನದಿಗಳು ಹರಿಯುತ್ತಿವೆ. ಅದರ ಹಣ್ಣುಗಳು ಮತ್ತು ನೆರಳು ಶಾಶ್ವತವಾಗಿವೆ. ಅದು ದೇವಭ-ಯವುಳ್ಳವರ ಅಂತಿಮ ಸ್ಥಿತಿಯಾಗಿದೆ! ಸತ್ಯನಿಷೇಧಿಗಳ ಅಂತಿಮ

---

[1] ಅಂದರೆ ಅಲ್ಲಾಹನ ಹೊರತು ಬೇರೆ ದೇವರುಗಳಿದ್ದಾರೆಂಬ ವಿಷಯ ಅಲ್ಲಾಹನಿಗೆ ತಿಳಿದಿಲ್ಲ. ನೀವು ಆರಾಧಿಸುತ್ತಿರುವ ವಿಗ್ರಹಗಳು ದೇವ-ರುಗಳೆಂಬುದಕ್ಕೆ ಯಾವುದೇ ಆಧಾರವಿಲ್ಲ. ನೀವು ಹೇಳುತ್ತಿರುವ ನಿಮ್ಮ ದೇವರುಗಳ ಹೆಸರುಗಳನ್ನು ಅಲ್ಲಾಹು ಅವನ ಗ್ರಂಥಗಳಲ್ಲಿ ಅವತೀ-ರ್ಣಗೊಳಿಸಿಲ್ಲ. ಅವು ನೀವು ಮತ್ತು ಪೂರ್ವಜರು ಇಟ್ಟ ಹೆಸರುಗಳಾಗಿವೆ.

ಸ್ಥಿತಿಯು ನರಕಾಗ್ನಿಯಾಗಿದೆ.

36. ನಾವು (ಇದಕ್ಕೆ ಮೊದಲು) ಯಾರಿಗೆ ಗ್ರಂಥವನ್ನು ನೀಡಿದ್ದೇವೋ ಅವರು ನಿಮಗೆ ಅವತೀರ್ಣವಾದ ಈ ಗ್ರಂಥದ ಬಗ್ಗೆ ಸಂತಸಪಡುತ್ತಾರೆ. ಅದರ ಕೆಲವು ಭಾಗಗಳನ್ನು ನಿಷೇಧಿಸುವ ಪಂಗಡಗಳೂ ಅವರಲ್ಲಿವೆ. ಹೇಳಿರಿ: "ಅಲ್ಲಾಹನನ್ನು ಮಾತ್ರ ಆರಾಧಿಸಬೇಕು ಮತ್ತು ಅವನೊಂದಿಗೆ ಏನೂ ಸಹಭಾಗಿತ್ವ (ಶಿರ್ಕ್) ಮಾಡಬಾರದೆಂದು ನನಗೆ ಆಜ್ಞಾಪಿಸಲಾಗಿದೆ. ನಾನು ಅವನ ಕಡೆಗೇ ಕರೆಯುತ್ತಿದ್ದೇನೆ. ನಾನು ಮರಳಿಹೋಗುವುದು ಕೂಡ ಅವನ ಬಳಿಗೇ ಆಗಿದೆ."

وَٱلَّذِينَ ءَاتَيۡنَٰهُمُ ٱلۡكِتَٰبَ يَفۡرَحُونَ بِمَآ أُنزِلَ إِلَيۡكَۖ وَمِنَ ٱلۡأَحۡزَابِ مَن يُنكِرُ بَعۡضَهُۥۚ قُلۡ إِنَّمَآ أُمِرۡتُ أَنۡ أَعۡبُدَ ٱللَّهَ وَلَآ أُشۡرِكَ بِهِۦٓۚ إِلَيۡهِ أَدۡعُواْ وَإِلَيۡهِ مَـَٔابِ ٣٦

37. ಈ ರೀತಿ ನಾವು ಈ ಕುರ್‌ಆನನ್ನು ಅರಬ್ಬಿ ಭಾಷೆಯಲ್ಲಿರುವ ಆಜ್ಞೆಯಾಗಿ ಅವತೀರ್ಣಗೊಳಿಸಿದ್ದೇವೆ. ನಿಮಗೆ ಜ್ಞಾನ ಬಂದ ಬಳಿಕವೂ ನೀವು ಅವರ ಸ್ವೇಚ್ಛೆಗಳನ್ನು ಹಿಂಬಾಲಿಸಿದರೆ, ನಿಮ್ಮನ್ನು ಅಲ್ಲಾಹನ ಶಿಕ್ಷೆಯಿಂದ ಪಾರು ಮಾಡುವ ಯಾವುದೇ ಸಹಾಯಕರು ಅಥವಾ ರಕ್ಷಕರು ಇರಲಾರರು.

وَكَذَٰلِكَ أَنزَلۡنَٰهُ حُكۡمًا عَرَبِيّٗاۚ وَلَئِنِ ٱتَّبَعۡتَ أَهۡوَآءَهُم بَعۡدَ مَا جَآءَكَ مِنَ ٱلۡعِلۡمِ مَا لَكَ مِنَ ٱللَّهِ مِن وَلِيّٖ وَلَا وَاقٖ ٣٧

38. ನಿಮಗಿಂತ ಮೊದಲೂ ನಾವು ಸಂದೇಶವಾಹಕರುಗಳನ್ನು ಕಳುಹಿಸಿದ್ದೇವೆ. ಅವರಿಗೆ ನಾವು ಪತ್ನಿ-ಮಕ್ಕಳನ್ನು ನೀಡಿದ್ದೇವೆ. ಅಲ್ಲಾಹನ ಅಪ್ಪಣೆಯಿಲ್ಲದೆ ಯಾವುದೇ ಒಂದು ದೃಷ್ಟಾಂತವನ್ನು ತರಲು ಸಂದೇಶವಾಹಕರಲ್ಲಿ ಯಾರಿಗೂ ಸಾಧ್ಯವಿಲ್ಲ. ಎಲ್ಲಾ ನಿಶ್ಚಿತ ವಾಗ್ದಾನಗಳಿಗೂ ಒಂದು ಲಿಖಿತ ಸಮಯವಿದೆ.

وَلَقَدۡ أَرۡسَلۡنَا رُسُلٗا مِّن قَبۡلِكَ وَجَعَلۡنَا لَهُمۡ أَزۡوَٰجٗا وَذُرِّيَّةٗۚ وَمَا كَانَ لِرَسُولٍ أَن يَأۡتِيَ بِـَٔايَةٍ إِلَّا بِإِذۡنِ ٱللَّهِۗ لِكُلِّ أَجَلٖ كِتَابٞ ٣٨

39. ಅಲ್ಲಾಹು ಅವನು ಇಚ್ಛಿಸುವುದನ್ನು ಅಳಿಸುತ್ತಾನೆ ಮತ್ತು (ಅವನು ಇಚ್ಛಿಸುವುದನ್ನು) ಸ್ಥಿರಗೊಳಿಸುತ್ತಾನೆ. ಮೂಲಗ್ರಂಥವು ಅವನ ಬಳಿಯಲ್ಲಿದೆ.

يَمۡحُواْ ٱللَّهُ مَا يَشَآءُ وَيُثۡبِتُۖ وَعِندَهُۥٓ أُمُّ ٱلۡكِتَٰبِ ٣٩

40. ನಾವು ಅವರಿಗೆ ವಾಗ್ದಾನ ಮಾಡುವ ಶಿಕ್ಷೆಗಳಲ್ಲಿ ಕೆಲವನ್ನು ನಾವು ನಿಮಗೆ ತೋರಿಸಿಕೊಟ್ಟರೂ ಅಥವಾ (ಅದಕ್ಕಿಂತ ಮೊದಲೇ) ನಾವು ನಿಮ್ಮ ಆತ್ಮವನ್ನು ವಶಪಡಿಸಿದರೂ ನಿಮ್ಮ ಕರ್ತವ್ಯವು ಸಂದೇಶವನ್ನು ತಲುಪಿಸುವುದು ಮಾತ್ರ. ವಿಚಾರಣೆ ಮಾಡಬೇಕಾದುದು ನಮ್ಮ ಹೊಣೆಯಾಗಿದೆ.

وَإِن مَّا نُرِيَنَّكَ بَعۡضَ ٱلَّذِي نَعِدُهُمۡ أَوۡ نَتَوَفَّيَنَّكَ فَإِنَّمَا عَلَيۡكَ ٱلۡبَلَٰغُ وَعَلَيۡنَا ٱلۡحِسَابُ ٤٠

41. ನಾವು ಭೂಮಿಯನ್ನು ಅದರ ಕಿನಾರೆಗಳಿಂದ ಕುಗ್ಗಿಸುವುದನ್ನು ಅವರು ನೋಡುವುದಿಲ್ಲವೇ?[1] ಅಲ್ಲಾಹು ತೀರ್ಪು ನೀಡುತ್ತಾನೆ.

أَوَلَمۡ يَرَوۡاْ أَنَّا نَأۡتِي ٱلۡأَرۡضَ نَنقُصُهَا مِنۡ أَطۡرَافِهَاۚ وَٱللَّهُ يَحۡكُمُ لَا مُعَقِّبَ لِحُكۡمِهِۦۚ وَهُوَ سَرِيعُ

[1] ಅಂದರೆ ಸತ್ಯನಿಷೇಧಿಗಳ ವಶದಲ್ಲಿರುವ ಪ್ರದೇಶಗಳು ಕುಗ್ಗುವುದನ್ನು ಮತ್ತು ಸತ್ಯವಿಶ್ವಾಸಿಗಳ ವಶದಲ್ಲಿರುವ ಪ್ರದೇಶಗಳು ಹಿಗ್ಗುವುದನ್ನು ಅವರು ನೋಡುವುದಿಲ್ಲವೇ?

ಅವನ ತೀರ್ಪನ್ನು ಹಿಂದಿಕ್ಕಲು (ರದ್ದು ಮಾಡಲು) ಯಾರಿಗೂ ಸಾಧ್ಯವಿಲ್ಲ. ಅವನು ಶೀಘ್ರವಾಗಿ ವಿಚಾರಣೆ ಮಾಡುತ್ತಾನೆ.

ٱلۡحِسَابِ ﴿٤١﴾

42. ಇವರಿಗಿಂತ ಮೊದಲಿನವರು ಕೂಡ ಪಿತೂರಿ ಮಾಡಿದ್ದರು. ಆದರೆ ತಂತ್ರಗಾರಿಕೆಗಳೆಲ್ಲವೂ ಅಲ್ಲಾಹನಿಗೆ ಸೇರಿದ್ದು. ಪ್ರತಿಯೊಬ್ಬ ಮನುಷ್ಯನು ಮಾಡುವ ಕರ್ಮಗಳನ್ನು ಅವನು ತಿಳಿಯುತ್ತಾನೆ. ಅಂತಿಮ ಭವನವು ಯಾರಿಗೆ ದೊರೆಯಲಿದೆಯೆಂದು ಸತ್ಯನಿಷೇಧಿಗಳು ಸದ್ಯವೇ ತಿಳಿಯುವರು.

وَقَدۡ مَكَرَ ٱلَّذِينَ مِن قَبۡلِهِمۡ فَلِلَّهِ ٱلۡمَكۡرُ جَمِيعٗاۖ يَعۡلَمُ مَا تَكۡسِبُ كُلُّ نَفۡسٖۗ وَسَيَعۡلَمُ ٱلۡكُفَّٰرُ لِمَنۡ عُقۡبَى ٱلدَّارِ ﴿٤٢﴾

43. ಸತ್ಯನಿಷೇಧಿಗಳು ಹೇಳುತ್ತಾರೆ: “ನೀನು ಸಂದೇಶವಾಹಕನಲ್ಲ.” ಹೇಳಿರಿ: “ನನ್ನ ಮತ್ತು ನಿಮ್ಮ ನಡುವೆ ಸಾಕ್ಷಿ ನುಡಿಯಲು ಅಲ್ಲಾಹು ಸಾಕು. ಯಾರ ಬಳಿ ಗ್ರಂಥದ ಜ್ಞಾನವಿದೆಯೋ ಅವರೂ ಸಾಕು.”

وَيَقُولُ ٱلَّذِينَ كَفَرُواْ لَسۡتَ مُرۡسَلٗاۚ قُلۡ كَفَىٰ بِٱللَّهِ شَهِيدَۢا بَيۡنِي وَبَيۡنَكُمۡ وَمَنۡ عِندَهُۥ عِلۡمُ ٱلۡكِتَٰبِ ﴿٤٣﴾

# 14. ಇಬ್ರಾಹೀಮ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಅಲಿಫ್ ಲಾಮ್ ರಾ. ಇದು ಗ್ರಂಥ. ನೀವು ಮನುಷ್ಯರನ್ನು ಅವರ ಪರಿಪಾಲಕನ (ಅಲ್ಲಾಹನ) ಅಪ್ಪಣೆಯಂತೆ ಅಂಧಕಾರಗಳಿಂದ ಬೆಳಕಿಗೆ—ಪ್ರಬಲನು ಮತ್ತು ಸ್ತುತ್ಯರ್ಹನಾದವನ ಮಾರ್ಗಕ್ಕೆ—ತರಲು ನಾವು ಇದನ್ನು ನಿಮಗೆ ಅವತೀರ್ಣಗೊಳಿಸಿದ್ದೇವೆ.

الٓرۚ كِتَٰبٌ أَنزَلۡنَٰهُ إِلَيۡكَ لِتُخۡرِجَ ٱلنَّاسَ مِنَ ٱلظُّلُمَٰتِ إِلَى ٱلنُّورِ بِإِذۡنِ رَبِّهِمۡ إِلَىٰ صِرَٰطِ ٱلۡعَزِيزِ ٱلۡحَمِيدِ ﴿١﴾

2. ಅಂದರೆ, ಭೂಮ್ಯಾಕಾಶಗಳಲ್ಲಿರುವ ವಸ್ತುಗಳೆಲ್ಲವೂ ಯಾರಿಗೆ ಸೇರಿದೆಯೋ ಆ ಅಲ್ಲಾಹನ ಮಾರ್ಗಕ್ಕೆ. ಸತ್ಯನಿಷೇಧಿಗಳಿಗೆ ಕಠೋರ ಶಿಕ್ಷೆಯ ದುರ್ಗತಿ ಕಾದಿದೆ.

ٱللَّهِ ٱلَّذِي لَهُۥ مَا فِي ٱلسَّمَٰوَٰتِ وَمَا فِي ٱلۡأَرۡضِۗ وَوَيۡلٞ لِّلۡكَٰفِرِينَ مِنۡ عَذَابٖ شَدِيدٍ ﴿٢﴾

3. ಅವರು ಯಾರೆಂದರೆ, ಪರಲೋಕಕ್ಕಿಂತಲೂ ಇಹಲೋಕಕ್ಕೆ ಆದ್ಯತೆ ನೀಡುವವರು, ಅಲ್ಲಾಹನ ಮಾರ್ಗದಿಂದ ಜನರನ್ನು ತಡೆಗಟ್ಟುವವರು ಮತ್ತು ಅದರಲ್ಲಿ ವಕ್ರತೆಯನ್ನು ಹುಡುಕುವವರು. ಅವರು ಅತಿವಿದೂರದ ದುರ್ಮಾರ್ಗದಲ್ಲಿದ್ದಾರೆ.

ٱلَّذِينَ يَسۡتَحِبُّونَ ٱلۡحَيَوٰةَ ٱلدُّنۡيَا عَلَى ٱلۡأٓخِرَةِ وَيَصُدُّونَ عَن سَبِيلِ ٱللَّهِ وَيَبۡغُونَهَا عِوَجًاۚ أُوْلَٰٓئِكَ فِي ضَلَٰلِۭ بَعِيدٖ ﴿٣﴾

4. ನಾವು ಎಲ್ಲಾ ಸಂದೇಶವಾಹಕರನ್ನೂ ಅವರ ಜನರ ಭಾಷೆಯಲ್ಲಿ (ಮಾತನಾಡುವಂತೆ) ಕಳುಹಿಸಿದ್ದೇವೆ. ಅವರು ಜನರಿಗೆ ಸಂದೇಶವನ್ನು ಸ್ಪಷ್ಟವಾಗಿ ವಿವರಿಸಿಕೊಡುವುದಕ್ಕಾಗಿ. ಅಲ್ಲಾಹು ಅವನು ಇಚ್ಛಿಸುವವರನ್ನು ದಾರಿತಪ್ಪಿಸುತ್ತಾನೆ ಮತ್ತು ಅವನು ಇಚ್ಛಿಸುವವರಿಗೆ ಸನ್ಮಾರ್ಗವನ್ನು ತೋರಿಸುತ್ತಾನೆ. ಅವನು

وَمَآ أَرۡسَلۡنَا مِن رَّسُولٍ إِلَّا بِلِسَانِ قَوۡمِهِۦ لِيُبَيِّنَ لَهُمۡۖ فَيُضِلُّ ٱللَّهُ مَن يَشَآءُ وَيَهۡدِي مَن يَشَآءُۚ وَهُوَ ٱلۡعَزِيزُ ٱلۡحَكِيمُ ﴿٤﴾

ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

---

5. “ನಿಮ್ಮ ಜನರನ್ನು ಅಂಧಕಾರಗಳಿಂದ ಬೆಳಕಿಗೆ ತನ್ನಿರಿ ಮತ್ತು ಅವರಿಗೆ ಅಲ್ಲಾಹನ ಉಪಕಾರಗಳನ್ನು ನೆನಪಿಸಿಕೊಡಿ” (ಎಂದು ಆದೇಶಿಸುತ್ತಾ) ನಾವು ಮೂಸಾರನ್ನು ನಮ್ಮ ದೃಷ್ಟಾಂತಗಳೊಂದಿಗೆ ಕಳುಹಿಸಿದೆವು. ನಿಶ್ಚಯವಾಗಿಯೂ, ಸೈರಣೆಯಿರುವ ಮತ್ತು ಕೃತಜ್ಞರಾದ ಪ್ರತಿಯೊಬ್ಬರಿಗೂ ಅದರಲ್ಲಿ ದೃಷ್ಟಾಂತಗಳಿವೆ.

وَلَقَدۡ أَرۡسَلۡنَا مُوسَىٰ بِـَٔايَٰتِنَآ أَنۡ أَخۡرِجۡ قَوۡمَكَ
مِنَ ٱلظُّلُمَٰتِ إِلَى ٱلنُّورِ وَذَكِّرۡهُم بِأَيَّىٰمِ ٱللَّهِۚ
إِنَّ فِي ذَٰلِكَ لَأٓيَٰتٖ لِّكُلِّ صَبَّارٖ شَكُورٖ ٥

---

6. ಮೂಸಾ ತಮ್ಮ ಜನರಿಗೆ ಹೇಳಿದ ಸಂದರ್ಭ: “(ಓ ಜನರೇ!) ನಿಮಗೆ ಕಠೋರ ಹಿಂಸೆ ನೀಡುತ್ತಿದ್ದ, ನಿಮ್ಮ ಗಂಡು ಮಕ್ಕಳ ಕತ್ತು ಕೊಯ್ಯುತ್ತಿದ್ದ ಮತ್ತು ನಿಮ್ಮ ಹೆಣ್ಣು ಮಕ್ಕಳನ್ನು ಜೀವಂತ ಬಿಡುತ್ತಿದ್ದ ಫರೋಹನ ಜನರಿಂದ ಅಲ್ಲಾಹು ನಿಮ್ಮ ರಕ್ಷಿಸಿದ ಸಂದರ್ಭದಲ್ಲಿ ಅವನು ನಿಮಗೆ ಕರುಣಿಸಿದ ಅನುಗ್ರಹವನ್ನು ಸ್ಮರಿಸಿ. ಅದರಲ್ಲಿ ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಒಂದು ಮಹಾ ಪರೀಕ್ಷೆಯಿತ್ತು”.

وَإِذۡ قَالَ مُوسَىٰ لِقَوۡمِهِ ٱذۡكُرُواْ نِعۡمَةَ ٱللَّهِ
عَلَيۡكُمۡ إِذۡ أَنجَىٰكُم مِّنۡ ءَالِ فِرۡعَوۡنَ
يَسُومُونَكُمۡ سُوٓءَ ٱلۡعَذَابِ وَيُذَبِّحُونَ
أَبۡنَآءَكُمۡ وَيَسۡتَحۡيُونَ نِسَآءَكُمۡۚ وَفِي ذَٰلِكُم
بَلَآءٞ مِّن رَّبِّكُمۡ عَظِيمٞ ٦

---

7. ನಿಮ್ಮ ಪರಿಪಾಲಕನು (ಅಲ್ಲಾಹು) ಘೋಷಿಸಿದ ಸಂದರ್ಭ: “ನೀವು ಕೃತಜ್ಞರಾದರೆ ನಾನು ನಿಮಗೆ (ಅನುಗ್ರಹವನ್ನು) ಖಂಡಿತ ಹೆಚ್ಚಿಸುವೆನು. ಆದರೆ ನೀವು ಕೃತಘ್ನರಾದರೆ ನನ್ನ ಶಿಕ್ಷೆಯು ಅತಿಕಠೋರವಾಗಿದೆ.”

وَإِذۡ تَأَذَّنَ رَبُّكُمۡ لَئِن شَكَرۡتُمۡ لَأَزِيدَنَّكُمۡۖ
وَلَئِن كَفَرۡتُمۡ إِنَّ عَذَابِي لَشَدِيدٞ ٧

---

8. ಮೂಸಾ ಹೇಳಿದರು: “ನೀವು ಮತ್ತು ಭೂಮಿಯಲ್ಲಿರುವ ಮನುಷ್ಯರೆಲ್ಲರೂ ಒಟ್ಟಾಗಿ ಅಲ್ಲಾಹನನ್ನು ನಿಷೇಧಿಸಿದರೂ (ಅದರಿಂದ ಅಲ್ಲಾಹನಿಗೇನೂ ನಷ್ಟವಿಲ್ಲ). ಅಲ್ಲಾಹು ನಿರಪೇಕ್ಷನು ಮತ್ತು ಸ್ತುತ್ಯರ್ಹನಾಗಿದ್ದಾನೆ.”

وَقَالَ مُوسَىٰٓ إِن تَكۡفُرُوٓاْ أَنتُمۡ وَمَن فِي ٱلۡأَرۡضِ
جَمِيعٗا فَإِنَّ ٱللَّهَ لَغَنِيٌّ حَمِيدٌ ٨

---

9. ನಿಮಗಿಂತ ಮೊದಲಿನ ನೂಹರ ಜನರು, ಆದ್ ಮತ್ತು ಸಮೂದ್ ಗೋತ್ರಗಳು ಹಾಗೂ ಅವರ ನಂತರ ಬಂದ—ಅಲ್ಲಾಹನ ಹೊರತು ಬೇರೆ ಯಾರೂ ತಿಳಿದಿರದ ಗೋತ್ರಗಳು—ಮುಂತಾದವರ ಸಮಾಚಾರಗಳು ನಿಮಗೆ ತಲುಪಿಲ್ಲವೇ? ಅವರ ಸಂದೇಶವಾಹಕರುಗಳು ಸ್ಪಷ್ಟ ಸಾಕ್ಷ್ಯಾಧಾರಗಳೊಂದಿಗೆ ಅವರ ಬಳಿಗೆ ಬಂದಿದ್ದರು. ಆಗ ಅವರು ತಮ್ಮ ಕೈಯನ್ನು ಬಾಯಿಗೆ ಒತ್ತಿ ಹಿಡಿದು ಹೇಳಿದರು: “ಯಾವ ಸಂದೇಶದೊಂದಿಗೆ ನಿಮ್ಮನ್ನು ಕಳುಹಿಸಲಾಗಿದೆಯೋ ಅದನ್ನು ನಾವು ಸಂಪೂರ್ಣವಾಗಿ ನಿಷೇಧಿಸಿದ್ದೇವೆ. ನೀವು ನಮ್ಮನ್ನು ಯಾವ ಧರ್ಮದ ಕಡೆಗೆ ಕರೆಯುತ್ತಿದ್ದೀರೋ ಅದರ ಬಗ್ಗೆ ನಮಗೆ ಗೊಂದಲಪೂರ್ಣ ಸಂಶಯಗಳಿವೆ.”

أَلَمۡ يَأۡتِكُمۡ نَبَؤُاْ ٱلَّذِينَ مِن قَبۡلِكُمۡ قَوۡمِ نُوحٖ
وَعَادٖ وَثَمُودَ وَٱلَّذِينَ مِنۢ بَعۡدِهِمۡ لَا يَعۡلَمُهُمۡ
إِلَّا ٱللَّهُۚ جَآءَتۡهُمۡ رُسُلُهُم بِٱلۡبَيِّنَٰتِ فَرَدُّوٓاْ
أَيۡدِيَهُمۡ فِيٓ أَفۡوَٰهِهِمۡ وَقَالُوٓاْ إِنَّا كَفَرۡنَا بِمَآ
أُرۡسِلۡتُم بِهِۦ وَإِنَّا لَفِي شَكّٖ مِّمَّا تَدۡعُونَنَآ إِلَيۡهِ
مُرِيبٖ ٩

10. ಅವರ ಸಂದೇಶವಾಹಕರುಗಳು ಕೇಳಿದರು: “ಭೂಮ್ಯಾಕಾಶಗಳ ಸೃಷ್ಟಿಕರ್ತನಾದ ಅಲ್ಲಾಹನ ಬಗ್ಗೆ ನಿಮಗೆ ಸಂಶಯವೇ? ನಿಮ್ಮ ಪಾಪಗಳನ್ನು ಕ್ಷಮಿಸಲು ಮತ್ತು ಒಂದು ನಿಗದಿತ ಅವಧಿಯ ತನಕ ನಿಮಗೆ ಕಾಲಾವಕಾಶ ನೀಡಲು ಅವನು ನಿಮ್ಮನ್ನು ಕರೆಯುತ್ತಿದ್ದಾನೆ.” ಅವರು ಹೇಳಿದರು: “ನೀವು ನಮ್ಮಂತಿರುವ ಮನುಷ್ಯರೇ ಆಗಿದ್ದೀರಿ. ನಮ್ಮ ಪೂರ್ವಜರು ಯಾರನ್ನು ಆರಾಧಿ-ಸುತ್ತಿದ್ದರೋ ಅವರಿಂದ ನಮ್ಮನ್ನು ತಡೆಯುವುದೇ ನಿಮ್ಮ ಉದ್ದೇಶವಾಗಿದೆ. ನಮಗೆ ಸ್ಪಷ್ಟ ಸಾಕ್ಷ್ಯಾಧಾರವನ್ನು ತಂದು ತೋರಿಸಿ.”

قَالَتۡ رُسُلُهُمۡ أَفِي ٱللَّهِ شَكّٞ فَاطِرِ ٱلسَّمَٰوَٰتِ
وَٱلۡأَرۡضِۖ يَدۡعُوكُمۡ لِيَغۡفِرَ لَكُم مِّن ذُنُوبِكُمۡ
وَيُؤَخِّرَكُمۡ إِلَىٰٓ أَجَلٖ مُّسَمّٗىۚ قَالُوٓاْ إِنۡ أَنتُمۡ إِلَّا
بَشَرٞ مِّثۡلُنَا تُرِيدُونَ أَن تَصُدُّونَا عَمَّا كَانَ
يَعۡبُدُ ءَابَآؤُنَا فَأۡتُونَا بِسُلۡطَٰنٖ مُّبِينٖ ١٠

11. ಅವರ ಸಂದೇಶವಾಹಕರುಗಳು ಕೇಳಿದರು: “ನಾವು ನಿಮ್ಮಂತಿರುವ ಮನುಷ್ಯರೇ ಆಗಿದ್ದೇವೆ. ಆದರೆ ಅಲ್ಲಾಹು ಅವನ ದಾಸರಲ್ಲಿ ಅವನು ಇಚ್ಛಿಸುವವರನ್ನು ಆಶೀರ್ವದಿಸುತ್ತಾನೆ. ಅಲ್ಲಾಹನ ಅನುಮತಿಯಿಲ್ಲದೆ ಯಾವುದೇ ಸಾಕ್ಷ್ಯಾಧಾರವನ್ನು ತರಲು ನಮಗೆ ಸಾಧ್ಯವಿಲ್ಲ. ಸತ್ಯವಿಶ್ವಾಸಿಗಳು ಅಲ್ಲಾಹನಲ್ಲಿಯೇ ಭರವಸೆಯಿಡಲಿ.

قَالَتۡ لَهُمۡ رُسُلُهُمۡ إِن نَّحۡنُ إِلَّا بَشَرٞ مِّثۡلُكُمۡ
وَلَٰكِنَّ ٱللَّهَ يَمُنُّ عَلَىٰ مَن يَشَآءُ مِنۡ عِبَادِهِۦۖ
وَمَا كَانَ لَنَآ أَن نَّأۡتِيَكُم بِسُلۡطَٰنٍ إِلَّا بِإِذۡنِ
ٱللَّهِۚ وَعَلَى ٱللَّهِ فَلۡيَتَوَكَّلِ ٱلۡمُؤۡمِنُونَ ١١

12. ಅಲ್ಲಾಹು ನಮಗೆ ನಮ್ಮ ಮಾರ್ಗಗಳನ್ನು ಸ್ಪಷ್ಟವಾಗಿ ತೋರಿಸಿರುವಾಗ ಅವನಲ್ಲಿ ಭರವಸೆಯಿಡದಿರಲು ನಮಗೇನು ಹಕ್ಕಿದೆ? ನೀವು ನೀಡುವ ಕಿರುಕುಳಗಳನ್ನು ನಾವು ಖಂಡಿತ ಸಹಿಸಿಕೊಳ್ಳುತ್ತೇವೆ. ಭರವಸೆಯಿಡುವವರು ಅಲ್ಲಾಹನಲ್ಲಿಯೇ ಭರವಸೆಯಿಡಲಿ.”

وَمَا لَنَآ أَلَّا نَتَوَكَّلَ عَلَى ٱللَّهِ وَقَدۡ هَدَىٰنَا
سُبُلَنَاۚ وَلَنَصۡبِرَنَّ عَلَىٰ مَآ ءَاذَيۡتُمُونَاۚ وَعَلَى ٱللَّهِ
فَلۡيَتَوَكَّلِ ٱلۡمُتَوَكِّلُونَ ١٢

13. ಸತ್ಯನಿಷೇಧಿಗಳು ಅವರ ಸಂದೇಶವಾಹಕರುಗಳೊಡನೆ ಹೇಳಿದರು: “ನಾವು ನಿಮ್ಮನ್ನು ನಮ್ಮ ಊರಿನಿಂದ ಖಂಡಿತ ಓಡಿಸುತ್ತೇವೆ. ಅಥವಾ ನೀವು ನಮ್ಮ ಧರ್ಮಕ್ಕೆ ಮರಳಿ ಬರಲೇಬೇಕು. ಆಗ ಅವರ ಪರಿಪಾಲಕನು (ಅಲ್ಲಾಹು) ಅವರಿಗೆ ದೇವವಾಣಿಯನ್ನು ನೀಡಿದನು: “ಆ ಅಕ್ರಮಿಗಳನ್ನು ನಾವು ಖಂಡಿತ ಸರ್ವನಾಶ ಮಾಡುತ್ತೇವೆ.

وَقَالَ ٱلَّذِينَ كَفَرُواْ لِرُسُلِهِمۡ لَنُخۡرِجَنَّكُم
مِّنۡ أَرۡضِنَآ أَوۡ لَتَعُودُنَّ فِي مِلَّتِنَاۖ فَأَوۡحَىٰٓ إِلَيۡهِمۡ
رَبُّهُمۡ لَنُهۡلِكَنَّ ٱلظَّٰلِمِينَ ١٣

14. ಅವರ ಬಳಿಕ ನಾವು ನಿಮ್ಮನ್ನು ಭೂಮಿಯಲ್ಲಿ ವಾಸ ಮಾಡಿಸುತ್ತೇವೆ. ಇದು ನನ್ನ ಮುಂದೆ ನಿಲ್ಲುವುದನ್ನು ಭಯಪಡುವವರಿಗೆ ಮತ್ತು ನನ್ನ ಎಚ್ಚರಿಕೆಗಳನ್ನು ಭಯಪಡುವವರಿಗಾಗಿದೆ.”

وَلَنُسۡكِنَنَّكُمُ ٱلۡأَرۡضَ مِنۢ بَعۡدِهِمۡۚ ذَٰلِكَ لِمَنۡ
خَافَ مَقَامِي وَخَافَ وَعِيدِ ١٤

15. ಅವರು (ಪ್ರವಾದಿಗಳು) ತೀರ್ಪು ನೀಡಬೇಕೆಂದು ಅಂಗಲಾಚಿದರು. ಪ್ರತಿಯೊಬ್ಬ ಹಠಮಾರಿ ಪೀಡಕನು ನೆಲಕಚ್ಚಿದನು.

وَٱسۡتَفۡتَحُواْ وَخَابَ كُلُّ جَبَّارٍ عَنِيدٖ ١٥

16. ನರಕಾಗ್ನಿ ಅವನ ಮುಂಭಾಗದಲ್ಲೇ ಇದೆ. ಅವನಿಗೆ ಕೀವು ತುಂಬಿದ ನೀರನ್ನು ಕುಡಿಸಲಾಗುವುದು.

مِّن وَرَآئِهِۦ جَهَنَّمُ وَيُسْقَىٰ مِن مَّآءٖ صَدِيدٖ ﴿١٦﴾

17. ಅವನು ಅದನ್ನು ಅತೀವ ತ್ರಾಸದಿಂದ ಗುಟುಕರಿಸುವನು. ಆದರೂ ಅದನ್ನು ಗಂಟಲ ಕೆಳಗಿಳಿಸಲು ಅವನಿಗೆ ಸಾಧ್ಯ-ವಾಗುವುದಿಲ್ಲ. ಸಾವು ಎಲ್ಲಾ ಕಡೆಗಳಿಂದಲೂ ಅವನ ಬಳಿಗೆ ಬರುವುದು. ಆದರೂ ಅವನು ಸಾಯುವುದಿಲ್ಲ. ಅವನಿಗೆ ಅದರ ಹಿಂದೆಯೇ ಅತಿಕಠೋರ ಶಿಕ್ಷೆಯೂ ಇದೆ.

يَتَجَرَّعُهُۥ وَلَا يَكَادُ يُسِيغُهُۥ وَيَأْتِيهِ ٱلْمَوْتُ مِن كُلِّ مَكَانٖ وَمَا هُوَ بِمَيِّتٖۖ وَمِن وَرَآئِهِۦ عَذَابٌ غَلِيظٞ ﴿١٧﴾

18. ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ನಿಷೇಧಿಸಿದವರು ಯಾರೋ—ಅವರ ಕರ್ಮಗಳ ಉದಾಹರಣೆಯು ಬೂದಿಯಂತೆ. ಬಿರುಗಾಳಿಯ ದಿನ ಅದಕ್ಕೆ ಬಲವಾದ ಗಾಳಿ ಬೀಸಿತು. ಅವರು ಮಾಡಿದ ಕರ್ಮಗಳಲ್ಲಿ ಯಾವುದರ ಮೇಲೂ (ಅದನ್ನು ಹಿಡಿ-ದಿಟ್ಟುಕೊಳ್ಳಲು) ಅವರಿಗೆ ಸಾಮರ್ಥ್ಯವಿಲ್ಲ. ಅತಿವಿದೂರವಾದ ದುರ್ಮಾರ್ಗವೆಂದರೆ ಇದೇ.[1]

مَّثَلُ ٱلَّذِينَ كَفَرُواْ بِرَبِّهِمْۖ أَعْمَٰلُهُمْ كَرَمَادٍ ٱشْتَدَّتْ بِهِ ٱلرِّيحُ فِي يَوْمٍ عَاصِفٖۖ لَّا يَقْدِرُونَ مِمَّا كَسَبُواْ عَلَىٰ شَيْءٖۚ ذَٰلِكَ هُوَ ٱلضَّلَٰلُ ٱلْبَعِيدُ ﴿١٨﴾

19. ಅಲ್ಲಾಹು ಭೂಮ್ಯಾಕಾಶಗಳನ್ನು ಅತ್ಯಂತ ನಿಖರವಾಗಿ ಸೃಷ್ಟಿಸಿದ್ದಾನೆಂದು ನೀವು ನೋಡಿಲ್ಲವೇ? ಅವನು ಇಚ್ಛಿಸಿದರೆ ಅವನು ನಿಮ್ಮನ್ನು ತೊಲಗಿಸಿ ಹೊಸ ಸೃಷ್ಟಿಯನ್ನು ತರುವನು.

أَلَمْ تَرَ أَنَّ ٱللَّهَ خَلَقَ ٱلسَّمَٰوَٰتِ وَٱلْأَرْضَ بِٱلْحَقِّۚ إِن يَشَأْ يُذْهِبْكُمْ وَيَأْتِ بِخَلْقٖ جَدِيدٖ ﴿١٩﴾

20. ಅಲ್ಲಾಹನ ಮಟ್ಟಿಗೆ ಅದು ಕಷ್ಟವೇ ಅಲ್ಲ.

وَمَا ذَٰلِكَ عَلَى ٱللَّهِ بِعَزِيزٖ ﴿٢٠﴾

21. ಅವರೆಲ್ಲರೂ ಅಲ್ಲಾಹನ ಬಳಿಗೆ ಹೊರಟು ಬರುವರು. ಆಗ ಬಲಹೀನರು ಅಹಂಕಾರಿಗಳೊಂದಿಗೆ ಹೇಳುವರು: "ನಾವು ನಿಜಕ್ಕೂ ನಿಮ್ಮ ಹಿಂಬಾಲಕರಾಗಿದ್ದೆವು. ಈಗ ಅಲ್ಲಾಹನ ಶಿಕ್ಷೆಯಿಂದ ಒಂದಂಶವನ್ನಾದರೂ ನಮ್ಮಿಂದ ದೂರ ಮಾಡುವಿರಾ?" ಅವರು ಉತ್ತರಿಸುವರು: "ಅಲ್ಲಾಹು ನಮಗೆ ಸನ್ಮಾರ್ಗ ತೋರಿಸುತ್ತಿದ್ದರೆ ನಾವು ನಿಮಗೂ ಸನ್ಮಾರ್ಗ ತೋರಿಸುತ್ತಿದ್ದೆವು. ಈಗ ನಾವು ಸಹನೆ ಕಳೆದುಕೊಂಡರೂ ಸಹನೆಯಿಂದ ವರ್ತಿಸಿದರೂ ಯಾವುದೇ ವ್ಯತ್ಯಾಸವಿಲ್ಲ. ನಮಗೆ ಯಾವುದೇ ರಕ್ಷಾಮಾರ್ಗವಿಲ್ಲ."

وَبَرَزُواْ لِلَّهِ جَمِيعٗا فَقَالَ ٱلضُّعَفَٰٓؤُاْ لِلَّذِينَ ٱسْتَكْبَرُوٓاْ إِنَّا كُنَّا لَكُمْ تَبَعٗا فَهَلْ أَنتُم مُّغْنُونَ عَنَّا مِنْ عَذَابِ ٱللَّهِ مِن شَيْءٖۚ قَالُواْ لَوْ هَدَىٰنَا ٱللَّهُ لَهَدَيْنَٰكُمْۖ سَوَآءٌ عَلَيْنَآ أَجَزِعْنَآ أَمْ صَبَرْنَا مَا لَنَا مِن مَّحِيصٖ ﴿٢١﴾

22. ವಿಷಯವನ್ನು ತೀರ್ಮಾನಿಸಲಾದಾಗ ಶೈತಾನನು ಹೇಳುವನು: "ನಿಜಕ್ಕೂ ಅಲ್ಲಾಹು ನಿಮಗೆ ಮಾಡಿದ ವಾಗ್ದಾನವು ಸತ್ಯವಾಗಿತ್ತು. ನಾನೂ ನಿಮಗೆ ವಾಗ್ದಾನ ಮಾಡಿದ್ದೆ. ಆದರೆ ನಾನು ನನ್ನ

وَقَالَ ٱلشَّيْطَٰنُ لَمَّا قُضِيَ ٱلْأَمْرُ إِنَّ ٱللَّهَ وَعَدَكُمْ وَعْدَ ٱلْحَقِّ وَوَعَدتُّكُمْ

[1] ಬಿರುಗಾಳಿ ಬೀಸಿದರೆ ಬೂದಿಯ ಸ್ಥಿತಿ ಏನಾಗುವುದೋ ಪರಲೋಕಕ್ಕೆ ಬರುವಾಗ ಸತ್ಯನಿಷೇಧಿಗಳ ಕರ್ಮಗಳು ಸ್ಥಿತಿಯೂ ಅದೇ ಆಗುತ್ತದೆ. ಅವರು ಮಾಡಿದ ಯಾವುದೇ ಸತ್ಕರ್ಮಕ್ಕೂ ಅಲ್ಲಿ ಪ್ರತಿಫಲವಿಲ್ಲ. ಎಲ್ಲವೂ ನೀರಿನಲ್ಲಿ ಮಾಡಿದ ಹೋಮದಂತೆ ವ್ಯರ್ಥವಾಗುತ್ತವೆ.

فَأَخۡلَفۡتُكُمۡۖ وَمَا كَانَ لِيَ عَلَيۡكُم مِّن سُلۡطَٰنٍ إِلَّآ أَن دَعَوۡتُكُمۡ فَٱسۡتَجَبۡتُمۡ لِيۖ فَلَا تَلُومُونِي وَلُومُوٓاْ أَنفُسَكُمۖ مَّآ أَنَا۠ بِمُصۡرِخِكُمۡ وَمَآ أَنتُم بِمُصۡرِخِيَّ إِنِّي كَفَرۡتُ بِمَآ أَشۡرَكۡتُمُونِ مِن قَبۡلُۗ إِنَّ ٱلظَّٰلِمِينَ لَهُمۡ عَذَابٌ أَلِيمٞ ٢٢

ವಾಗ್ದಾನವನ್ನು ಉಲ್ಲಂಘಿಸಿದ್ದೇನೆ. ನನಗೆ ನಿಮ್ಮ ಮೇಲೆ ಯಾವುದೇ ಅಧಿಕಾರವಿರಲಿಲ್ಲ. ನಾನು ನಿಮ್ಮನ್ನು ಕರೆದಾಗ ನೀವು ನನ್ನ ಹಿಂದೆ ಓಡಿ ಬಂದಿರಿ. ಆದ್ದರಿಂದ ನನ್ನ ಮೇಲೆ ಅಪವಾದ ಹೊರಿಸಬೇಡಿ. ನಿಮ್ಮ ಮೇಲೆಯೇ ಅಪವಾದ ಹೊರಿಸಿರಿ. ನನ್ನನ್ನು ಸಹಾಯಕ್ಕಾಗಿ ಕೂಗಬೇಡಿ. ನಾನು ನಿಮ್ಮನ್ನು ಸಹಾಯಕ್ಕಾಗಿ ಕೂಗುವುದಿಲ್ಲ. ನೀವು ಇದಕ್ಕೆ ಮೊದಲು ನನ್ನನ್ನು ಅಲ್ಲಾಹನೊಂದಿಗೆ ಸಹಭಾಗಿಯನ್ನಾಗಿ ಮಾಡಿದ್ದನ್ನು ನಾನು ನಿಷೇಧಿಸಿದ್ದೇನೆ. ನಿಶ್ಚಯವಾಗಿಯೂ, ಅಕ್ರಮಿಗಳಿಗೆ ಯಾತನಾಮಯ ಶಿಕ್ಷೆಯಿದೆ."

---

وَأُدۡخِلَ ٱلَّذِينَ ءَامَنُواْ وَعَمِلُواْ ٱلصَّٰلِحَٰتِ جَنَّٰتٖ تَجۡرِي مِن تَحۡتِهَا ٱلۡأَنۡهَٰرُ خَٰلِدِينَ فِيهَا بِإِذۡنِ رَبِّهِمۡۖ تَحِيَّتُهُمۡ فِيهَا سَلَٰمٌ ٢٣

23. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರನ್ನು ತಳಭಾಗದಲ್ಲಿ ನದಿಗಳು ಹರಿಯುವ ಸ್ವರ್ಗೋದ್ಯಾನ-ಗಳಿಗೆ ಪ್ರವೇಶ ಮಾಡಿಸಲಾಗುವುದು. ಅವರ ಪರಿಪಾಲಕನ (ಅಲ್ಲಾಹನ) ಅಪ್ಪಣೆಯಿಂದ ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅಲ್ಲಿ ಅವರ ಅಭಿವಂದನೆಯು ಸಲಾಂ (ಶಾಂತಿ) ಎಂದಾಗಿರುವುದು.

---

أَلَمۡ تَرَ كَيۡفَ ضَرَبَ ٱللَّهُ مَثَلٗا كَلِمَةٗ طَيِّبَةٗ كَشَجَرَةٖ طَيِّبَةٍ أَصۡلُهَا ثَابِتٞ وَفَرۡعُهَا فِي ٱلسَّمَآءِ ٢٤

24. ಅಲ್ಲಾಹು ಪರಿಶುದ್ಧ ವಚನಕ್ಕೆ[1] ಯಾವ ರೀತಿಯಲ್ಲಿ ಉದಾಹರಣೆ ನೀಡಿದ್ದಾನೆಂದು ನೀವು ನೋಡಿಲ್ಲವೇ? ಅದೊಂದು ಪರಿಶುದ್ಧ ಮರದಂತೆ. ಅದರ ಬೇರುಗಳು ಭದ್ರವಾಗಿವೆ ಮತ್ತು ರೆಂಭೆಗಳು ಆಕಾಶದಲ್ಲಿವೆ.

---

تُؤۡتِيٓ أُكُلَهَا كُلَّ حِينِۭ بِإِذۡنِ رَبِّهَاۗ وَيَضۡرِبُ ٱللَّهُ ٱلۡأَمۡثَالَ لِلنَّاسِ لَعَلَّهُمۡ يَتَذَكَّرُونَ ٢٥

25. ಅದರ ಪರಿಪಾಲಕನ (ಅಲ್ಲಾಹನ) ಅಪ್ಪಣೆಯಿಂದ ಅದು ಎಲ್ಲ ಕಾಲಗಳಲ್ಲೂ ಫಲ ನೀಡುತ್ತದೆ. ಅಲ್ಲಾಹು ಜನರಿಗೆ ಉದಾಹರಣೆ-ಗಳನ್ನು ವಿವರಿಸುತ್ತಾನೆ. ಅವರು ಉಪದೇಶ ಪಡೆಯುವುದಕ್ಕಾಗಿ.

---

وَمَثَلُ كَلِمَةٍ خَبِيثَةٖ كَشَجَرَةٍ خَبِيثَةٍ ٱجۡتُثَّتۡ مِن فَوۡقِ ٱلۡأَرۡضِ مَا لَهَا مِن قَرَارٖ ٢٦

26. ಹೊಲಸು ವಚನದ[2] ಉದಾಹರಣೆಯು ಒಂದು ಹೊಲಸು ಮರದಂತೆ. ಅದು ಭೂಮಿಯಿಂದ ಬೇರು ಸಹಿತ ಕಿತ್ತು ಹೋಗಿದೆ. ಅದಕ್ಕೆ ಯಾವುದೇ ಭದ್ರತೆಯಿಲ್ಲ.

---

[1] ಪರಿಶುದ್ಧ ವಚನ ಎಂದರೆ 'ಲಾಇಲಾಹ ಇಲ್ಲಲ್ಲಾಹ್' (ಅಲ್ಲಾಹನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ) ಎಂಬ ವಚನ. ಈ ವಚನವನ್ನು ಸ್ವೀಕರಿಸಿ ಇದರ ಆಧಾರದಲ್ಲಿ ಬದುಕುವ ಸತ್ಯವಿಶ್ವಾಸಿಗೆ ಯಾವುದೇ ಭಯವಿಲ್ಲ. ಅವನು ಸಂಪೂರ್ಣ ಆತ್ಮಶಾಂತಿಯೊಂದಿಗೆ ಬದುಕುತ್ತಾನೆ. ಜೀವನದಲ್ಲಿ ಏರುಪೇರುಗಳನ್ನು ಕಾಣುವಾಗ, ಕಷ್ಟಗಳು ಬರುವಾಗ, ದುರಂತಗಳು ಸಂಭವಿಸುವಾಗ ಅವನು ಧೃತಿಗೆಡುವು-ದಿಲ್ಲ. ಅವನು ಅಲ್ಲಾಹನಲ್ಲಿ ಸಂಪೂರ್ಣ ಭರವಸೆಯಿಟ್ಟು ಮುಂದುವರಿಯುತ್ತಾನೆ. ಅವನ ಎಲ್ಲಾ ಕರ್ಮಗಳಿಗೂ ಪರಲೋಕದಲ್ಲಿ ಅತ್ಯುತ್ತಮ ಪ್ರತಿಫಲವಿರುತ್ತದೆ.

[2] ಹೊಲಸು ವಚನ ಎಂದರೆ ದೇವಸಹಭಾಗಿತ್ವ (ಶಿರ್ಕ್) ಮತ್ತು ಸತ್ಯನಿಷೇಧ (ಕುಫ್ರ್) ದ ವಚನಗಳು. ಈ ವಚನಕ್ಕೆ ಯಾವುದೇ ಅಡಿಪಾಯವಿಲ್ಲ. ಒಂದು ಸಣ್ಣ ಗಾಳಿಗೂ ಇದು ಕಿತ್ತು ಹೋಗಬಹುದು. ದೇವಸಹಭಾಗಿತ್ವ ಮತ್ತು ಸತ್ಯನಿಷೇಧದಲ್ಲಿ ಬದುಕುವವರ ಜೀವನವು ಸುಭದ್ರವಲ್ಲ. ಅವರಿಗೆ ಆತ್ಮಶಾಂತಿಯಿರುವುದಿಲ್ಲ. ಒಂದು ಸಣ್ಣ ಕಷ್ಟ ಬಂದರೂ ಅವರು ಧೃತಿಗೆಡುತ್ತಾರೆ. ಕೆಲವೊಮ್ಮೆ ತಮ್ಮ ಜೀವನವನ್ನೇ ಕೊನೆಗೊಳಿ-ಸುತ್ತಾರೆ. ಪರಲೋಕದಲ್ಲಿ ಅವರ ಕರ್ಮಗಳಿಗೆ ಯಾವುದೇ ಪ್ರತಿಫಲವಿರುವುದಿಲ್ಲ.

27. ಅಲ್ಲಾಹು ಸತ್ಯವಿಶ್ವಾಸಿಗಳನ್ನು ಇಹಲೋಕದಲ್ಲಿ ಮತ್ತು ಪರಲೋಕದಲ್ಲಿ ಸದೃಢ ವಚನದ ಮೂಲಕ ದೃಢವಾಗಿ ನಿಲ್ಲಿಸುತ್ತಾನೆ.[1] ಅಕ್ರಮವೆಸಗಿದವರನ್ನು ಅಲ್ಲಾಹು ದಾರಿತಪ್ಪಿಸು- ತ್ತಾನೆ. ಅಲ್ಲಾಹು ಅವನು ಇಚ್ಛಿಸಿದ್ದನ್ನು ಮಾಡುತ್ತಾನೆ.

يُثَبِّتُ ٱللَّهُ ٱلَّذِينَ ءَامَنُواْ بِٱلۡقَوۡلِ ٱلثَّابِتِ
فِي ٱلۡحَيَوٰةِ ٱلدُّنۡيَا وَفِي ٱلۡأٓخِرَةِۖ وَيُضِلُّ ٱللَّهُ
ٱلظَّٰلِمِينَۚ وَيَفۡعَلُ ٱللَّهُ مَا يَشَآءُ ٢٧

28. ಅಲ್ಲಾಹನ ಅನುಗ್ರಹಕ್ಕೆ ಬದಲಿಯಾಗಿ ಕೃತಘ್ನತೆ ತೋರಿದ ಮತ್ತು ತಮ್ಮ ಜನರನ್ನು ನಾಶದ ಭವನಕ್ಕೆ ಇಳಿಸಿದವರನ್ನು ನೀವು ನೋಡಿಲ್ಲವೇ?

أَلَمۡ تَرَ إِلَى ٱلَّذِينَ بَدَّلُواْ نِعۡمَتَ ٱللَّهِ كُفۡرٗا
وَأَحَلُّواْ قَوۡمَهُمۡ دَارَ ٱلۡبَوَارِ ٢٨

29. ಅಂದರೆ ನರಕಾಗ್ನಿಗೆ. ಅವರು ಅದರಲ್ಲಿ (ಪ್ರವೇಶಿಸಿ) ಉರಿಯುವರು. ಅದು ಬಹಳ ನಿಕೃಷ್ಟ ವಾಸಸ್ಥಳವಾಗಿದೆ.

جَهَنَّمَ يَصۡلَوۡنَهَاۖ وَبِئۡسَ ٱلۡقَرَارُ ٢٩

30. ಜನರನ್ನು ಅಲ್ಲಾಹನ ಮಾರ್ಗದಿಂದ ತಪ್ಪಿಸುವುದಕ್ಕಾಗಿ ಅವರು ಅಲ್ಲಾಹನಿಗೆ ಕೆಲವು ಸರಿಸಾಟಿಗಳನ್ನು ಮಾಡಿದರು. ಹೇಳಿರಿ: "ನೀವು ಆನಂದಿಸಿರಿ. ಕೊನೆಗೆ ನಿಮ್ಮ ಮರಳುವಿಕೆಯು ನರಕಕ್ಕೇ ಆಗಿದೆ."

وَجَعَلُواْ لِلَّهِ أَندَادٗا لِّيُضِلُّواْ عَن سَبِيلِهِۦۗ قُلۡ
تَمَتَّعُواْ فَإِنَّ مَصِيرَكُمۡ إِلَى ٱلنَّارِ ٣٠

31. ನನ್ನ ಸತ್ಯವಿಶ್ವಾಸಿ ದಾಸರೊಡನೆ—ಅವರು ನಮಾಝ್ ಸಂಸ್ಥಾಪಿಸಲಿ ಮತ್ತು ಯಾವುದೇ ಕ್ರಯ-ವಿಕ್ರಯ ಅಥವಾ ಗೆಳೆತನವು ಉಪಕಾರ ಮಾಡದ ದಿನವು ಆಗಮಿಸುವ ಮೊದಲೇ ನಾವು ಅವರಿಗೆ ಒದಗಿಸಿದ ಧನದಿಂದ ರಹಸ್ಯವಾಗಿ ಮತ್ತು ಬಹಿರಂಗವಾಗಿ ಖರ್ಚು ಮಾಡಲಿ ಎಂದು ಹೇಳಿರಿ.

قُل لِّعِبَادِيَ ٱلَّذِينَ ءَامَنُواْ يُقِيمُواْ ٱلصَّلَوٰةَ
وَيُنفِقُواْ مِمَّا رَزَقۡنَٰهُمۡ سِرّٗا وَعَلَانِيَةٗ مِّن قَبۡلِ
أَن يَأۡتِيَ يَوۡمٞ لَّا بَيۡعٞ فِيهِ وَلَا خِلَٰلٌ ٣١

32. ಅಲ್ಲಾಹನೇ ಭೂಮ್ಯಾಕಾಶಗಳನ್ನು ಸೃಷ್ಟಿಸಿದವನು. ಅವನು ಆಕಾಶದಿಂದ ಮಳೆಯನ್ನು ಸುರಿಸಿದನು. ನಂತರ ಅದರಿಂದ ನಿಮ್ಮ ಉಪಜೀವನಕ್ಕಾಗಿ ಹಣ್ಣುಗಳನ್ನು ಉತ್ಪಾದಿಸಿದನು. ಕಡಲಲ್ಲಿ ಅವನ ಆಜ್ಞೆಯಂತೆ ಚಲಿಸಲು ಅವನು ನಿಮಗೆ ನಾವೆಯನ್ನು ನಿಯಂತ್ರಿಸಿಕೊಟ್ಟನು. ಅವನು ನದಿಗಳನ್ನು ಕೂಡ ನಿಮ್ಮ ನಿಯಂತ್ರಣಕ್ಕೆ ನೀಡಿದನು.

ٱللَّهُ ٱلَّذِي خَلَقَ ٱلسَّمَٰوَٰتِ وَٱلۡأَرۡضَ وَأَنزَلَ مِنَ
ٱلسَّمَآءِ مَآءٗ فَأَخۡرَجَ بِهِۦ مِنَ ٱلثَّمَرَٰتِ رِزۡقٗا
لَّكُمۡۖ وَسَخَّرَ لَكُمُ ٱلۡفُلۡكَ لِتَجۡرِيَ فِي ٱلۡبَحۡرِ
بِأَمۡرِهِۦۖ وَسَخَّرَ لَكُمُ ٱلۡأَنۡهَٰرَ ٣٢

33. ನಿರಂತರವಾಗಿ ಚಲಿಸುವ ರೀತಿಯಲ್ಲಿ ಸೂರ್ಯ-ಚಂದ್ರರನ್ನು ಅವನು ನಿಮಗೆ ನಿಯಂತ್ರಿಸಿಕೊಟ್ಟನು. ರಾತ್ರಿ-ಹಗಲಗಳನ್ನು ಕೂಡ ಅವನು ನಿಮಗೆ ನಿಯಂತ್ರಿಸಿಕೊಟ್ಟನು.

وَسَخَّرَ لَكُمُ ٱلشَّمۡسَ وَٱلۡقَمَرَ دَآئِبَيۡنِۖ وَسَخَّرَ
لَكُمُ ٱلَّيۡلَ وَٱلنَّهَارَ ٣٣

34. ನೀವು ಅವನೊಂದಿಗೆ ಕೇಳಿದ್ದೆಲ್ಲವನ್ನೂ ಅವನು ನಿಮಗೆ ನೀಡಿದನು. ನೀವು ಅಲ್ಲಾಹನ ಅನುಗ್ರಹಗಳನ್ನು

وَءَاتَىٰكُم مِّن كُلِّ مَا سَأَلۡتُمُوهُۚ وَإِن تَعُدُّواْ
نِعۡمَتَ ٱللَّهِ لَا تُحۡصُوهَآۗ إِنَّ ٱلۡإِنسَٰنَ لَظَلُومٞ

[1] ಇಹಲೋಕ ಜೀವನದಲ್ಲಿ, ಮರಣದ ಸಂದರ್ಭ ಮತ್ತು ಸಮಾಧಿಯಲ್ಲಿ ಪ್ರಶ್ನೆ ಕೇಳಲಾಗುವ ಸಂದರ್ಭ ಅಲ್ಲಾಹು ಸತ್ಯವಿಶ್ವಾಸಿಗಳನ್ನು 'ಲಾಇಲಾಹ ಇಲ್ಲಲ್ಲಾಹ್ ಮುಹಮ್ಮದ್ ರಸೂಲುಲ್ಲಾಹ್' ಎಂಬ ವಚನದಲ್ಲಿ ದೃಢವಾಗಿ ನಿಲ್ಲಿಸುತ್ತಾನೆ.

كَفَّارٌ ﴿٣٤﴾

ಎಣಿಸತೊಡಗಿದರೆ ಅವುಗಳನ್ನು ಲೆಕ್ಕ ಮಾಡಲು ನಿಮಗೆ ಸಾಧ್ಯವಿಲ್ಲ. ಮನುಷ್ಯನು ನಿಜಕ್ಕೂ ಕಡು ಅಕ್ರಮಿ ಮತ್ತು ಕೃತಘ್ನನಾಗಿದ್ದಾನೆ.

---

وَإِذْ قَالَ إِبْرَٰهِيمُ رَبِّ ٱجْعَلْ هَٰذَا ٱلْبَلَدَ ءَامِنًا وَٱجْنُبْنِى وَبَنِىَّ أَن نَّعْبُدَ ٱلْأَصْنَامَ ﴿٣٥﴾

35. ಇಬ್ರಾಹೀಮ್ ಪ್ರಾರ್ಥಿಸಿದ ಸಂದರ್ಭ(ವನ್ನು ಸ್ಮರಿಸಿ): “ಓ ನನ್ನ ಪರಿಪಾಲಕನೇ! ಈ ನಗರವನ್ನು (ಮಕ್ಕಾ) ನಿರ್ಭಯವಾಗಿ ಮಾಡು ಮತ್ತು ನನ್ನನ್ನು ಹಾಗೂ ನನ್ನ ಮಕ್ಕಳನ್ನು ವಿಗ್ರಹಾರಾಧನೆ ಮಾಡುವುದರಿಂದ ದೂರವಿರಿಸು.

---

رَبِّ إِنَّهُنَّ أَضْلَلْنَ كَثِيرًا مِّنَ ٱلنَّاسِ ۖ فَمَن تَبِعَنِى فَإِنَّهُۥ مِنِّى ۖ وَمَنْ عَصَانِى فَإِنَّكَ غَفُورٌ رَّحِيمٌ ﴿٣٦﴾

36. ಓ ನನ್ನ ಪರಿಪಾಲಕನೇ! ನಿಶ್ಚಯವಾಗಿಯೂ, ಅವು ಜನರಲ್ಲಿ ಹೆಚ್ಚಿನವರನ್ನು ದಾರಿತಪ್ಪಿಸಿವೆ. ಆದ್ದರಿಂದ ಯಾರು ನನ್ನನ್ನು ಹಿಂಬಾಲಿಸುತ್ತಾನೋ ಅವನು ನನ್ನವನು. ಯಾರು ನನಗೆ ಅವಿಧೇಯತೆ ತೋರುತ್ತಾನೋ—ನಿಶ್ಚಯವಾಗಿಯೂ ನೀನು ಕ್ಷಮಿಸುವವನು ಮತ್ತು ದಯೆ ತೋರುವವನಾಗಿರುವೆ.

---

رَّبَّنَآ إِنِّىٓ أَسْكَنتُ مِن ذُرِّيَّتِى بِوَادٍ غَيْرِ ذِى زَرْعٍ عِندَ بَيْتِكَ ٱلْمُحَرَّمِ رَبَّنَا لِيُقِيمُوا۟ ٱلصَّلَوٰةَ فَٱجْعَلْ أَفْـِٔدَةً مِّنَ ٱلنَّاسِ تَهْوِىٓ إِلَيْهِمْ وَٱرْزُقْهُم مِّنَ ٱلثَّمَرَٰتِ لَعَلَّهُمْ يَشْكُرُونَ ﴿٣٧﴾

37. ಓ ನಮ್ಮ ಪರಿಪಾಲಕನೇ! ನಾನು ನನ್ನ ಮಕ್ಕಳಲ್ಲಿ ಕೆಲವರನ್ನು ಹೊಲಗಳಿಲ್ಲದ ಈ ಕಣಿವೆಯಲ್ಲಿ ನಿನ್ನ ಪವಿತ್ರ ಭವನದ ಬಳಿ ವಾಸ ಮಾಡಿಸಿದ್ದೇನೆ. ಓ ನಮ್ಮ ಪರಿಪಾಲಕನೇ! ಅವರು ನಮಾಝ್ ಸಂಸ್ಥಾಪಿಸುವುದಕ್ಕಾಗಿ. ಆದ್ದರಿಂದ ಜನರಲ್ಲಿ ಕೆಲವರ ಹೃದಯಗಳು ಅವರ ಕಡೆಗೆ ಒಲಿಯುವಂತೆ ಮಾಡು. ಅವರ ಉಪಜೀವನಕ್ಕಾಗಿ ಹಣ್ಣು-ಹಂಪಲುಗಳನ್ನು ನೀಡು. ಅವರು ಕೃತಜ್ಞರಾಗಲೂಬಹುದು.[1]

---

رَبَّنَآ إِنَّكَ تَعْلَمُ مَا نُخْفِى وَمَا نُعْلِنُ ۗ وَمَا يَخْفَىٰ عَلَى ٱللَّهِ مِن شَىْءٍ فِى ٱلْأَرْضِ وَلَا فِى ٱلسَّمَآءِ ﴿٣٨﴾

38. ಓ ನಮ್ಮ ಪರಿಪಾಲಕನೇ! ನಾವು ಬಚ್ಚಿಡುವುದನ್ನು ಮತ್ತು ಬಹಿರಂಗಪಡಿಸುವುದನ್ನು ನೀನು ತಿಳಿಯುವೆ. ಭೂಮಿಯಲ್ಲಿ ಅಥವಾ ಆಕಾಶದಲ್ಲಿರುವ ಯಾವುದೇ ವಸ್ತು ಅಲ್ಲಾಹನಿಂದ ಮರೆಯಾಗಿಲ್ಲ.

---

ٱلْحَمْدُ لِلَّهِ ٱلَّذِى وَهَبَ لِى عَلَى ٱلْكِبَرِ إِسْمَٰعِيلَ وَإِسْحَٰقَ ۚ إِنَّ رَبِّى لَسَمِيعُ ٱلدُّعَآءِ ﴿٣٩﴾

39. ಇಳಿ ವಯಸ್ಸಿನಲ್ಲಿ ನನಗೆ ಇಸ್ಮಾಈಲ್ ಮತ್ತು ಇಸ್‌ಹಾಕರನ್ನು ದಯಪಾಲಿಸಿದ ಅಲ್ಲಾಹನಿಗೆ ಸರ್ವಸ್ತುತಿ. ನನ್ನ ಪರಿಪಾಲಕನು ನಿಜಕ್ಕೂ ಪ್ರಾರ್ಥನೆಗಳನ್ನು ಕೇಳುತ್ತಾನೆ.

---

رَبِّ ٱجْعَلْنِى مُقِيمَ ٱلصَّلَوٰةِ وَمِن ذُرِّيَّتِى ۚ رَبَّنَا وَتَقَبَّلْ دُعَآءِ ﴿٤٠﴾

40. ಓ ನನ್ನ ಪರಿಪಾಲಕನೇ! ನನ್ನನ್ನು ನಮಾಝ್ ಸಂಸ್ಥಾಪಿಸು-ವವನನ್ನಾಗಿ ಮಾಡು. ನನ್ನ ಸಂತಾನದಲ್ಲೂ ಕೂಡ. ಓ ನಮ್ಮ ಪರಿಪಾಲಕನೇ! ನನ್ನ ಪ್ರಾರ್ಥನೆಯನ್ನು ಸ್ವೀಕರಿಸು.

---

[1] ಇಬ್ರಾಹೀಂ (ಅವರ ಮೇಲೆ ಶಾಂತಿಯಿರಲಿ) ರವರು ಪತ್ನಿ ಹಾಜರ ಮತ್ತು ಪುತ್ರ ಇಸ್ಮಾಈಲರನ್ನು ಮಕ್ಕಾದ ನಿರ್ಜನ ಕಣಿವೆಯಲ್ಲಿ ಬಿಟ್ಟು ಹೊರಟುಹೋದರು. ಹೋಗುವಾಗ ಅವರು ಈ ಪ್ರಾರ್ಥನೆಯನ್ನು ಪ್ರಾರ್ಥಿಸಿದರು. ಅಲ್ಲಾಹು ಅವರ ಪ್ರಾರ್ಥನೆಯನ್ನು ಸ್ವೀಕರಿಸಿದನು. ಮುಂದೆ ಮಕ್ಕಾ ಎಲ್ಲಾ ರೀತಿಯ ಹಣ್ಣು-ಹಂಪಲುಗಳು ದೊರೆಯುವ ಒಂದು ಜನನಿಬಿಡ ಪ್ರದೇಶವಾಗಿ ಮಾರ್ಪಟ್ಟಿತು.

41. ಓ ನಮ್ಮ ಪರಿಪಾಲಕನೇ! ವಿಚಾರಣೆ ನಡೆಯುವ ದಿನ ನನ್ನನ್ನು, ನನ್ನ ತಂದೆ-ತಾಯಿಗಳನ್ನು ಮತ್ತು ಸತ್ಯವಿಶ್ವಾಸಿಗಳನ್ನು ಕ್ಷಮಿಸು."

رَبَّنَا ٱغۡفِرۡ لِي وَلِوَٰلِدَيَّ وَلِلۡمُؤۡمِنِينَ يَوۡمَ يَقُومُ ٱلۡحِسَابُ ٤١

42. ಅಕ್ರಮಿಗಳು ಮಾಡುವ ದುಷ್ಕರ್ಮಗಳನ್ನು ಅಲ್ಲಾಹು ಗಮನಿಸುತ್ತಿಲ್ಲ ಎಂದು ನೀವು ಎಂದಿಗೂ ಭಾವಿಸಬೇಡಿ. ಅವನು ಅವರ ವಿಚಾರಣೆಯನ್ನು ವಿಳಂಬ ಮಾಡುವುದು ಕಣ್ಣುಗಳು ಭಯದಿಂದ ದುರುಗುಟ್ಟಿ ನೋಡುವ ದಿನದವರೆಗೆ ಮಾತ್ರ.

وَلَا تَحۡسَبَنَّ ٱللَّهَ غَٰفِلًا عَمَّا يَعۡمَلُ ٱلظَّٰلِمُونَۚ إِنَّمَا يُؤَخِّرُهُمۡ لِيَوۡمٖ تَشۡخَصُ فِيهِ ٱلۡأَبۡصَٰرُ ٤٢

43. ಅವರು ತಮ್ಮ ತಲೆಗಳನ್ನು ಎತ್ತಿಹಿಡಿದು ಓಡೋಡಿ ಧಾವಿಸುವರು. ಅವರ ದೃಷ್ಟಿಗಳು ಅವರ ಬಳಿಗೆ ಮರಳುವುದಿಲ್ಲ. ಅವರ ಹೃದಯಗಳು ಬರಿದಾಗಿರುವುವು.

مُهۡطِعِينَ مُقۡنِعِي رُءُوسِهِمۡ لَا يَرۡتَدُّ إِلَيۡهِمۡ طَرۡفُهُمۡۖ وَأَفۡـِٔدَتُهُمۡ هَوَآءٞ ٤٣

44. ಜನರಿಗೆ ಶಿಕ್ಷೆಯು ಬರುವ ದಿನದ ಬಗ್ಗೆ ಎಚ್ಚರಿಕೆ ನೀಡಿರಿ. ಆಗ ಅಕ್ರಮವೆಸಗಿದವರು ಹೇಳುವರು: "ಓ ನಮ್ಮ ಪರಿಪಾಲಕನೇ! ಸಮೀಪದ ಒಂದು ಅವಧಿಯವರೆಗೆ ನಮಗೆ ಕಾಲಾವಕಾಶ ನೀಡು. ನಾವು ನಿನ್ನ ಕರೆಗೆ ಉತ್ತರಿಸುತ್ತೇವೆ ಮತ್ತು ಸಂದೇಶ-ವಾಹಕರುಗಳನ್ನು ಅನುಸರಿಸುತ್ತೇವೆ." (ಆಗ ಅವರೊಡನೆ ಹೇಳಲಾಗುವುದು): "ನೀವು ಇಹಲೋಕದಿಂದ (ಪರಲೋಕಕ್ಕೆ) ತೆರಳುವುದೇ ಇಲ್ಲವೆಂದು ಇದಕ್ಕೆ ಮೊದಲು ನೀವು ಆಣೆ ಮಾಡಿ ಹೇಳುತ್ತಿದ್ದಿರಲ್ಲವೇ?"

وَأَنذِرِ ٱلنَّاسَ يَوۡمَ يَأۡتِيهِمُ ٱلۡعَذَابُ فَيَقُولُ ٱلَّذِينَ ظَلَمُواْ رَبَّنَآ أَخِّرۡنَآ إِلَىٰٓ أَجَلٖ قَرِيبٖ نُّجِبۡ دَعۡوَتَكَ وَنَتَّبِعِ ٱلرُّسُلَۗ أَوَلَمۡ تَكُونُوٓاْ أَقۡسَمۡتُم مِّن قَبۡلُ مَا لَكُم مِّن زَوَالٖ ٤٤

45. ಸ್ವಯಂ ಅಕ್ರಮವೆಸಗಿದವರ ವಾಸಸ್ಥಳಗಳಲ್ಲೇ ನೀವೂ ವಾಸವಾಗಿದ್ದಿರಿ. ಅವರೊಡನೆ ನಾವು ಹೇಗೆ ವರ್ತಿಸಿದೆವೆಂದು ನಿಮಗೆ ಸ್ಪಷ್ಟವಾಗಿ ತಿಳಿದಿತ್ತು. ನಾವು ನಿಮಗೆ ಉದಾಹರಣೆಗಳನ್ನೂ ನೀಡಿದ್ದೆವು.

وَسَكَنتُمۡ فِي مَسَٰكِنِ ٱلَّذِينَ ظَلَمُوٓاْ أَنفُسَهُمۡ وَتَبَيَّنَ لَكُمۡ كَيۡفَ فَعَلۡنَا بِهِمۡ وَضَرَبۡنَا لَكُمُ ٱلۡأَمۡثَالَ ٤٥

46. ಅವರು ತಮ್ಮ ತಂತ್ರಗಳನ್ನು ಪ್ರಯೋಗಿಸುತ್ತಿದ್ದರು. ಅವರ ಎಲ್ಲಾ ತಂತ್ರಗಳ ಬಗ್ಗೆ ಅಲ್ಲಾಹನಿಗೆ ತಿಳಿದಿದೆ. ಅವರ ತಂತ್ರಗಳಿಗೆ ಪರ್ವತಗಳನ್ನು ಅವುಗಳ ಸ್ಥಳದಿಂದ ಚಲಿಸುವಂತೆ ಮಾಡುವ ಶಕ್ತಿಯೇನೂ ಇಲ್ಲ.

وَقَدۡ مَكَرُواْ مَكۡرَهُمۡ وَعِندَ ٱللَّهِ مَكۡرُهُمۡ وَإِن كَانَ مَكۡرُهُمۡ لِتَزُولَ مِنۡهُ ٱلۡجِبَالُ ٤٦

47. ಅಲ್ಲಾಹು ತನ್ನ ಸಂದೇಶವಾಹಕರುಗಳಿಗೆ ನೀಡಿದ ವಾಗ್ದಾನವನ್ನು ಉಲ್ಲಂಘಿಸುತ್ತಾನೆಂದು ನೀವು ಎಂದಿಗೂ ಭಾವಿಸಬೇಡಿ. ನಿಶ್ಚಯವಾಗಿಯೂ ಅಲ್ಲಾಹು ಪ್ರಬಲನು ಮತ್ತು ಪ್ರತೀಕಾರ ಪಡೆಯುವವನಾಗಿದ್ದಾನೆ.

فَلَا تَحۡسَبَنَّ ٱللَّهَ مُخۡلِفَ وَعۡدِهِۦ رُسُلَهُۥٓۚ إِنَّ ٱللَّهَ عَزِيزٞ ذُو ٱنتِقَامٖ ٤٧

48. ಭೂಮಿಯು ಈ ಭೂಮಿಯಲ್ಲದ ಬೇರೆಯಾಗಿ ಮತ್ತು ಅದರಂತೆ

يَوۡمَ تُبَدَّلُ ٱلۡأَرۡضُ غَيۡرَ ٱلۡأَرۡضِ وَٱلسَّمَٰوَٰتُۖ

ಆಕಾಶಗಳು ಕೂಡ ಬದಲಾಗುವ ಹಾಗೂ ಮನುಷ್ಯರೆಲ್ಲರೂ ಏಕೈಕನು ಮತ್ತು ಮಹಾ ಶಕ್ತಿಶಾಲಿಯಾದ ಅಲ್ಲಾಹನ ಮುಂಭಾಗಕ್ಕೆ ಬರುವ ದಿನ.

وَبَرَزُواْ لِلَّهِ ٱلۡوَٰحِدِ ٱلۡقَهَّارِ ٤٨

---

49. ಅಂದು ಅಪರಾಧಿಗಳನ್ನು ಸಂಕೋಲೆಗಳಲ್ಲಿ ಒಟ್ಟೊಟ್ಟಿಗೆ ಬಂಧಿಸಿ-ಟ್ಟಿರುವುದನ್ನು ನೀವು ಕಾಣುವಿರಿ.

وَتَرَى ٱلۡمُجۡرِمِينَ يَوۡمَئِذٖ مُّقَرَّنِينَ فِي ٱلۡأَصۡفَادِ ٤٩

---

50. ಅವರ ಉಡುಪುಗಳು ಕಪ್ಪು ರಾಳದ್ದಾಗಿರುವುವು ಮತ್ತು ಬೆಂಕಿ ಅವರ ಮುಖಗಳನ್ನು ಮುಚ್ಚಿಕೊಳ್ಳುವುದು.

سَرَابِيلُهُم مِّن قَطِرَانٖ وَتَغۡشَىٰ وُجُوهَهُمُ ٱلنَّارُ ٥٠

---

51. ಅಲ್ಲಾಹು ಪ್ರತಿಯೊಬ್ಬನಿಗೂ ಅವನು ಮಾಡಿದ ಕರ್ಮಗಳ ಪ್ರತಿಫಲವನ್ನು ನೀಡುವುದಕ್ಕಾಗಿ. ನಿಶ್ಚಯವಾಗಿಯೂ, ಅಲ್ಲಾಹು ಅತಿಶೀಘ್ರವಾಗಿ ವಿಚಾರಣೆ ಮಾಡುವವನಾಗಿದ್ದಾನೆ.

لِيَجۡزِيَ ٱللَّهُ كُلَّ نَفۡسٖ مَّا كَسَبَتۡۚ إِنَّ ٱللَّهَ سَرِيعُ ٱلۡحِسَابِ ٥١

---

52. ಈ ಕುರ್‌ಆನ್ ಸಂಪೂರ್ಣ ಮನುಕುಲಕ್ಕೆ ಒಂದು ಸೂಚನಾ-ಪತ್ರವಾಗಿದೆ. ಇದರ ಮೂಲಕ ಅವರಿಗೆ ಎಚ್ಚರಿಕೆ ನೀಡುವುದಕ್ಕಾಗಿ, ಏಕೈಕ ದೇವನು ಅಲ್ಲಾಹು ಮಾತ್ರವೆಂದು ಅವರು ತಿಳಿಯುವುದಕ್ಕಾಗಿ ಮತ್ತು ಬುದ್ಧಿವಂತರು ಉಪದೇಶ ಸ್ವೀಕರಿಸುವುದಕ್ಕಾಗಿ.

هَٰذَا بَلَٰغٞ لِّلنَّاسِ وَلِيُنذَرُواْ بِهِۦ وَلِيَعۡلَمُوٓاْ أَنَّمَا هُوَ إِلَٰهٞ وَٰحِدٞ وَلِيَذَّكَّرَ أُوْلُواْ ٱلۡأَلۡبَٰبِ ٥٢

# 15. ಅಲ್-ಹಿಜ್ರ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

---

1. ಅಲಿಫ್ ಲಾಮ್ ರಾ. ಇವು ದೈವಿಕ ಗ್ರಂಥದ ವಚನಗಳು ಮತ್ತು ಸ್ಪಷ್ಟ ಕುರ್‌ಆನ್ ಆಗಿದೆ.

الٓرۚ تِلۡكَ ءَايَٰتُ ٱلۡكِتَٰبِ وَقُرۡءَانٖ مُّبِينٖ ١

---

2. "ನಾವು ಮುಸಲ್ಮಾನರಾಗಿದ್ದರೆ!" ಎಂದು ಕೆಲವೊಮ್ಮೆ ಸತ್ಯನಿಷೇಧಿಗಳು ಹಾರೈಸುವರು.[1]

رُّبَمَا يَوَدُّ ٱلَّذِينَ كَفَرُواْ لَوۡ كَانُواْ مُسۡلِمِينَ ٢

---

3. ಅವರನ್ನು ಬಿಟ್ಟುಬಿಡಿ. ಅವರು ತಿನ್ನುತ್ತಲೂ, ಆನಂದಿಸುತ್ತಲೂ, ಹುಸಿ ಭರವಸೆಗಳಲ್ಲಿ ತಲ್ಲೀನರಾಗುತ್ತಲೂ ಇರಲಿ. ಸದ್ಯವೇ ಅವರು ತಿಳಿಯುವರು.

ذَرۡهُمۡ يَأۡكُلُواْ وَيَتَمَتَّعُواْ وَيُلۡهِهِمُ ٱلۡأَمَلُۖ فَسَوۡفَ يَعۡلَمُونَ ٣

---

4. ನಾವು ಯಾವುದೇ ಊರನ್ನು ಅದಕ್ಕೆ ಒಂದು ನಿಗದಿತ

وَمَآ أَهۡلَكۡنَا مِن قَرۡيَةٍ إِلَّا وَلَهَا

---

[1] ಮರಣದ ಸಮಯದಲ್ಲಿ, ದೇವದೂತರು ನರಕಾಗ್ನಿಯನ್ನು ತೋರಿಸುವಾಗ, ಅವರನ್ನು ನರಕಾಗ್ನಿಗೆ ಎಸೆಯುವಾಗ, ಪಾಪಿಗಳಾದ ಸತ್ಯವಿಶ್ವಾ-ಸಿಗಳನ್ನು ನರಕ ಶಿಕ್ಷೆಯಿಂದ ಬಿಡುಗಡೆಗೊಳಿಸುವಾಗ, ಮುಸಲ್ಮಾನರು ವಿಚಾರಣೆ ನಡೆದು ಸ್ವರ್ಗಕ್ಕೆ ಹೋಗುವಾಗ ಮುಂತಾದ ಸಂದರ್ಭಗಳಲ್ಲಿ ನಾವು ಮುಸಲ್ಮಾನರಾಗಿದ್ದರೆ ಎಂದು ಅವರು ಹಾರೈಸುವರು. ಆದರೆ ಈ ಹಾರೈಕೆಯಿಂದ ಅವರಿಗೆ ಯಾವುದೇ ಪ್ರಯೋಜನವಿರುವುದಿಲ್ಲ.

| | | |
|---|---|---|
| | ಅವಧಿಯನ್ನು ನೀಡದೆ ನಾಶ ಮಾಡಿಲ್ಲ. | كِتَابٞ مَّعۡلُومٞ ٤ |
| 5. | ಯಾವುದೇ ಜನತೆ ತಮ್ಮ ನಿಗದಿತ ಅವಧಿಯನ್ನು ದಾಟಿಹೋಗುವುದಿಲ್ಲ, ಹಿಂದೆ ಉಳಿಯುವುದೂ ಇಲ್ಲ. | مَّا تَسۡبِقُ مِنۡ أُمَّةٍ أَجَلَهَا وَمَا يَسۡتَـٔۡخِرُونَ ٥ |
| 6. | ಸತ್ಯನಿಷೇಧಿಗಳು ಹೇಳಿದರು: “ಓ ದೇವವಾಣಿ ಅವತೀರ್ಣವಾ-ಗುವವನೇ! ನಿಜಕ್ಕೂ ನೀನೊಬ್ಬ ಮಾನಸಿಕ ಅಸ್ವಸ್ಥ. | وَقَالُواْ يَـٰٓأَيُّهَا ٱلَّذِي نُزِّلَ عَلَيۡهِ ٱلذِّكۡرُ إِنَّكَ لَمَجۡنُونٞ ٦ |
| 7. | ನೀನು ಸತ್ಯವಂತನಾಗಿದ್ದರೆ ನೀನೇಕೆ ನಮ್ಮ ಬಳಿಗೆ ದೇವದೂತರು-ಗಳನ್ನು ತರುವುದಿಲ್ಲ?” | لَّوۡ مَا تَأۡتِينَا بِٱلۡمَلَـٰٓئِكَةِ إِن كُنتَ مِنَ ٱلصَّـٰدِقِينَ ٧ |
| 8. | ನಾವು ದೇವದೂತರುಗಳನ್ನು ಸತ್ಯ ಸಮೇತವಾಗಿಯೇ ಇಳಿಸುತ್ತೇವೆ.[1] ಆಗ ಅವರಿಗೆ ಯಾವುದೇ ಕಾಲಾವಕಾಶ ನೀಡಲಾಗಿರುವುದಿಲ್ಲ. | مَا نُنَزِّلُ ٱلۡمَلَـٰٓئِكَةَ إِلَّا بِٱلۡحَقِّ وَمَا كَانُوٓاْ إِذٗا مُّنظَرِينَ ٨ |
| 9. | ಈ ಕುರ್‌ಆನನ್ನು ಅವತೀರ್ಣಗೊಳಿಸಿದ್ದು ನಾವೇ. ನಾವೇ ಇದನ್ನು ಸಂರಕ್ಷಿಸುತ್ತೇವೆ. | إِنَّا نَحۡنُ نَزَّلۡنَا ٱلذِّكۡرَ وَإِنَّا لَهُۥ لَحَٰفِظُونَ ٩ |
| 10. | ನಿಮಗಿಂತ ಮೊದಲು ನಾವು ಹಿಂದಿನ ಕಾಲದ ಜನರ ಅನೇಕ ಪಂಗಡಗಳಿಗೆ ಸಂದೇಶವಾಹಕರನ್ನು ಕಳುಹಿಸಿದ್ದೆವು. | وَلَقَدۡ أَرۡسَلۡنَا مِن قَبۡلِكَ فِي شِيَعِ ٱلۡأَوَّلِينَ ١٠ |
| 11. | ಯಾವುದೇ ಸಂದೇಶವಾಹಕರು ಅವರ ಬಳಿಗೆ ಬಂದಾಗಲೆಲ್ಲಾ ಅವರು ತಮಾಷೆ ಮಾಡಿ ನಗುತ್ತಿದ್ದರು. | وَمَا يَأۡتِيهِم مِّن رَّسُولٍ إِلَّا كَانُواْ بِهِۦ يَسۡتَهۡزِءُونَ ١١ |
| 12. | ಅಪರಾಧಿಗಳ ಹೃದಯಗಳಲ್ಲಿ ನಾವು ಈ ರೀತಿ ಅದನ್ನು (ತಮಾಷೆ ಮಾಡುವುದನ್ನು) ತೂರಿಸಿ ಬಿಡುತ್ತೇವೆ. | كَذَٰلِكَ نَسۡلُكُهُۥ فِي قُلُوبِ ٱلۡمُجۡرِمِينَ ١٢ |
| 13. | ಅವರು ಅದರಲ್ಲಿ ವಿಶ್ವಾಸವಿಡುವುದಿಲ್ಲ. ಹಿಂದಿನ ಕಾಲದ ಜನರ ಮೇಲಿನ ಶಿಕ್ಷಾಕ್ರಮವು ಈಗಾಗಲೇ ಜರುಗಿ ಬಿಟ್ಟಿದೆ. | لَا يُؤۡمِنُونَ بِهِۦ وَقَدۡ خَلَتۡ سُنَّةُ ٱلۡأَوَّلِينَ ١٣ |
| 14. | ನಾವು ಅವರ ಮೇಲೆ ಆಕಾಶದ ದ್ವಾರವನ್ನು ತೆರೆದುಕೊಟ್ಟು ಅವರು ಅದಕ್ಕೆ ಏರಿಹೋದರೂ ಸಹ, | وَلَوۡ فَتَحۡنَا عَلَيۡهِم بَابٗا مِّنَ ٱلسَّمَآءِ فَظَلُّواْ فِيهِ يَعۡرُجُونَ ١٤ |
| 15. | ಅವರು ಹೇಳುವರು: “ನಮ್ಮನ್ನು ಮಂತ್ರಮುಗ್ಧಗೊಳಿಸಲಾಗಿದೆ. ಅಲ್ಲ, ನಮಗೆ ಮಾಟ ಮಾಡಲಾಗಿದೆ.”[2] | لَقَالُوٓاْ إِنَّمَا سُكِّرَتۡ أَبۡصَٰرُنَا بَلۡ نَحۡنُ قَوۡمٞ مَّسۡحُورُونَ ١٥ |

[1] ಯಾವುದಾದರೂ ಶಿಕ್ಷೆಯನ್ನು ಕಳುಹಿಸುವುದಕ್ಕಾಗಿಯೇ ಹೊರತು ನಾವು ದೇವದೂತರುಗಳನ್ನು ಇಳಿಸುವುದಿಲ್ಲ. ಅಂತಹ ಸಂದರ್ಭಗಳ-ಲ್ಲಿ ಅವರೆಲ್ಲರೂ ನಾಶವಾಗುತ್ತಾರೆ. ಅವರಿಗೆ ಪಶ್ಚಾತ್ತಾಪಪಡಲು ಯಾವುದೇ ಕಾಲಾವಕಾಶ ನೀಡಲಾಗುವುದಿಲ್ಲ.

[2] ದೇವದೂತರು ಬರಬೇಕು ಎಂದು ಸತ್ಯನಿಷೇಧಿಗಳು ಆಗ್ರಹಿಸುವುದು ಕೇವಲ ಸತ್ಯವಿಶ್ವಾಸಿಗಳಾಗುವುದರಿಂದ ನುಣುಚಿಕೊಳ್ಳಲು ಮಾತ್ರ.

16. ನಾವು ಆಕಾಶದಲ್ಲಿ ನಕ್ಷತ್ರ ಪುಂಜಗಳನ್ನು ಮಾಡಿದ್ದೇವೆ ಮತ್ತು ನೋಡುಗರಿಗಾಗಿ ಅವುಗಳನ್ನು ಅಲಂಕರಿಸಿದ್ದೇವೆ.

وَلَقَدْ جَعَلْنَا فِي ٱلسَّمَآءِ بُرُوجًا وَزَيَّنَّٰهَا لِلنَّٰظِرِينَ ﴿١٦﴾

17. ಮತ್ತು ಅದನ್ನು (ಆಕಾಶವನ್ನು) ಎಲ್ಲಾ ಬಹಿಷ್ಕೃತ ಶೈತಾನರಿಂದ ಸಂರಕ್ಷಿಸಿದ್ದೇವೆ.

وَحَفِظْنَٰهَا مِن كُلِّ شَيْطَٰنٍ رَّجِيمٍ ﴿١٧﴾

18. ಯಾರಾದರೂ ಕದ್ದಾಲಿಸಲು ಪ್ರಯತ್ನಿಸಿದರೆ, ಅಗ್ನಿಜ್ವಾಲೆಯು ಅವನನ್ನು ಹಿಂಬಾಲಿಸುತ್ತದೆ.

إِلَّا مَنِ ٱسْتَرَقَ ٱلسَّمْعَ فَأَتْبَعَهُۥ شِهَابٌ مُّبِينٌ ﴿١٨﴾

19. ನಾವು ಭೂಮಿಯನ್ನು ವಿಸ್ತರಿಸಿದೆವು ಮತ್ತು ಅದರಲ್ಲಿ ಪರ್ವತಗಳನ್ನು ಹಾಕಿದೆವು. ಅದರಲ್ಲಿ ನಾವು ಎಲ್ಲವನ್ನೂ ಒಂದು ನಿಗದಿತ ಪ್ರಮಾಣದಲ್ಲಿ ಬೆಳೆಸಿದೆವು.

وَٱلْأَرْضَ مَدَدْنَٰهَا وَأَلْقَيْنَا فِيهَا رَوَٰسِيَ وَأَنۢبَتْنَا فِيهَا مِن كُلِّ شَيْءٍ مَّوْزُونٍ ﴿١٩﴾

20. ಅದರಲ್ಲಿ ನಾವು ನಿಮಗೆ ಮತ್ತು ನೀವು ಆಹಾರ ನೀಡದವರಿಗೆ[1] ಜೀವನ ಮಾರ್ಗಗಳನ್ನು ಮಾಡಿಕೊಟ್ಟೆವು.

وَجَعَلْنَا لَكُمْ فِيهَا مَعَٰيِشَ وَمَن لَّسْتُمْ لَهُۥ بِرَٰزِقِينَ ﴿٢٠﴾

21. ಯಾವುದೇ ವಸ್ತುವಾದರೂ ಅದರ ಬೊಕ್ಕಸಗಳು ನಮ್ಮ ಬಳಿಯಲ್ಲೇ ಇವೆ. ನಾವು ಪ್ರತಿಯೊಂದು ವಸ್ತುವನ್ನೂ ಅದರ ನಿಗದಿತ ಪ್ರಮಾಣಕ್ಕೆ ಅನುಗುಣವಾಗಿಯೇ ಇಳಿಸುತ್ತೇವೆ.

وَإِن مِّن شَيْءٍ إِلَّا عِندَنَا خَزَآئِنُهُۥ وَمَا نُنَزِّلُهُۥٓ إِلَّا بِقَدَرٍ مَّعْلُومٍ ﴿٢١﴾

22. ನಾವು ಫಲವತ್ತಾಗಿಸುವ ಗಾಳಿಯನ್ನು ಕಳುಹಿಸುತ್ತೇವೆ. ನಂತರ ಆಕಾಶದಿಂದ ಮಳೆಯನ್ನು ಸುರಿಸಿ, ಅದನ್ನು ನಿಮಗೆ ಕುಡಿಯಲು ನೀಡುತ್ತೇವೆ. ನೀವು ಅದನ್ನು ಸಂಗ್ರಹಿಸಿಡುವವರಲ್ಲ.

وَأَرْسَلْنَا ٱلرِّيَٰحَ لَوَٰقِحَ فَأَنزَلْنَا مِنَ ٱلسَّمَآءِ مَآءً فَأَسْقَيْنَٰكُمُوهُ وَمَآ أَنتُمْ لَهُۥ بِخَٰزِنِينَ ﴿٢٢﴾

23. ನಿಶ್ಚಯವಾಗಿಯೂ ನಾವೇ ಜೀವನ ಮತ್ತು ಮರಣವನ್ನು ನೀಡುವವರು. ನಾವೇ (ಎಲ್ಲಾ ವಸ್ತುಗಳ) ಉತ್ತರಾಧಿಕಾರಿಗಳು.

وَإِنَّا لَنَحْنُ نُحْيِۦ وَنُمِيتُ وَنَحْنُ ٱلْوَٰرِثُونَ ﴿٢٣﴾

24. ನಿಮ್ಮಲ್ಲಿ ಇದಕ್ಕೆ ಮೊದಲು ತೀರಿ ಹೋದವರು ಯಾರೆಂದು ನಮಗೆ ತಿಳಿದಿದೆ. ಮುಂದೆ ಬರಲಿರುವವರು ಯಾರೆಂದೂ ನಮಗೆ ತಿಳಿದಿದೆ.

وَلَقَدْ عَلِمْنَا ٱلْمُسْتَقْدِمِينَ مِنكُمْ وَلَقَدْ عَلِمْنَا ٱلْمُسْتَـْٔخِرِينَ ﴿٢٤﴾

25. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಅವರೆಲ್ಲರನ್ನು ಒಟ್ಟು ಸೇರಿಸುವನು. ನಿಶ್ಚಯವಾಗಿಯೂ ಅವನು ವಿವೇಕಪೂರ್ಣನು ಮತ್ತು ಸರ್ವಜ್ಞನಾಗಿದ್ದಾನೆ.

وَإِنَّ رَبَّكَ هُوَ يَحْشُرُهُمْ ۚ إِنَّهُۥ حَكِيمٌ عَلِيمٌ ﴿٢٥﴾

---

ಅವರಿಗೆ ಆಕಾಶದ ಬಾಗಿಲುಗಳನ್ನು ತೆರೆದುಕೊಟ್ಟು ಅವರು ಅದಕ್ಕೆ ಏರಿ ಹೋಗಿ ಅಲ್ಲಿನ ಸ್ಥಿತಿಗಳನ್ನು ಕಣ್ಣಾರೆ ನೋಡಿದರೂ ಅವರು ಸಂದೇಶವಾಹಕರಲ್ಲಿ ವಿಶ್ವಾಸವಿಡುವುದಿಲ್ಲ. ನಮ್ಮನ್ನು ಮಂತ್ರಮುಗ್ಧಗೊಳಿಸಲಾಗಿದೆ ಅಥವಾ ನಮಗೆ ಮಾಟ ಮಾಡಲಾಗಿದೆ ಎಂದೇ ಅವರು ಹೇಳುವರು.

[1] ಅಂದರೆ ನೌಕರರು, ಕೂಲಿಯಾಳುಗಳು, ಗುಲಾಮರು, ಜಾನುವಾರುಗಳು ಮುಂತಾದ ನಿಮ್ಮ ಅಧೀನದಲ್ಲಿರುವವರು. ಇವರಿಗೆ ಆಹಾರ ಕೊಡುವುದು ನೀವಾದರೂ ವಾಸ್ತವವಾಗಿ ಅದು ನೀವಲ್ಲ. ಬದಲಿಗೆ, ಅವರಿಗೆ ಆಹಾರ ಕೊಡುವುದು ಅಲ್ಲಾಹನಾಗಿದ್ದಾನೆ.

| | | |
|---|---|---|
| 26. | ನಾವು ಮನುಷ್ಯನನ್ನು ಕಪ್ಪು, (ತಟ್ಟಿದರೆ) ಸದ್ದು ಮಾಡುವ, ಬದಲಾದ ಒಣ ಜೇಡಿಮಣ್ಣಿನಿಂದ ಸೃಷ್ಟಿಸಿದೆವು. | وَلَقَدۡ خَلَقۡنَا ٱلۡإِنسَٰنَ مِن صَلۡصَٰلٖ مِّنۡ حَمَإٖ مَّسۡنُونٖ ٢٦ |
| 27. | ನಾವು ಜಿನ್ನ್‌ಗಳನ್ನು ಇದಕ್ಕಿಂತ ಮೊದಲು ತೀಕ್ಷ್ಣ ತಾಪವಿರುವ ಬೆಂಕಿಯಿಂದ ಸೃಷ್ಟಿಸಿದೆವು. | وَٱلۡجَآنَّ خَلَقۡنَٰهُ مِن قَبۡلُ مِن نَّارِ ٱلسَّمُومِ ٢٧ |
| 28. | ತಮ್ಮ ಪರಿಪಾಲಕನು (ಅಲ್ಲಾಹು) ದೇವದೂತರುಗಳೊಡನೆ ಹೇಳಿದ ಸಂದರ್ಭ: “ನಾನು ಕಪ್ಪು, (ತಟ್ಟಿದರೆ) ಸದ್ದು ಮಾಡುವ, ಬದಲಾದ ಒಣ ಜೇಡಿಮಣ್ಣಿನಿಂದ ಮನುಷ್ಯನನ್ನು ಸೃಷ್ಟಿಸುತ್ತೇನೆ. | وَإِذۡ قَالَ رَبُّكَ لِلۡمَلَٰٓئِكَةِ إِنِّي خَٰلِقُۢ بَشَرٗا مِّن صَلۡصَٰلٖ مِّنۡ حَمَإٖ مَّسۡنُونٖ ٢٨ |
| 29. | ನಾನು ಅವನಿಗೆ ಪೂರ್ಣ ರೂಪವನ್ನು ನೀಡಿ ಅವನಿಗೆ ನನ್ನ ಆತ್ಮವನ್ನು ಊದಿದರೆ, ನೀವೆಲ್ಲರೂ ಅವನಿಗೆ ಸಾಷ್ಟಾಂಗ ಮಾಡುತ್ತಾ ಬೀಳಿರಿ.” | فَإِذَا سَوَّيۡتُهُۥ وَنَفَخۡتُ فِيهِ مِن رُّوحِي فَقَعُواْ لَهُۥ سَٰجِدِينَ ٢٩ |
| 30. | ಆಗ ದೇವದೂತರುಗಳೆಲ್ಲರೂ ಒಟ್ಟಾಗಿ ಸಾಷ್ಟಾಂಗ ಮಾಡಿದರು. | فَسَجَدَ ٱلۡمَلَٰٓئِكَةُ كُلُّهُمۡ أَجۡمَعُونَ ٣٠ |
| 31. | ಇಬ್ಲೀಸನ ಹೊರತು. ಅವನು ಸಾಷ್ಟಾಂಗ ಮಾಡುವವರೊಡನೆ ಸೇರಲು ನಿರಾಕರಿಸಿದನು. | إِلَّآ إِبۡلِيسَ أَبَىٰٓ أَن يَكُونَ مَعَ ٱلسَّٰجِدِينَ ٣١ |
| 32. | ಅಲ್ಲಾಹು ಕೇಳಿದನು: “ಓ ಇಬ್ಲೀಸ್! ನೀನು ಸಾಷ್ಟಾಂಗ ಮಾಡುವವರೊಡನೆ ಸೇರದಿರಲು ಕಾರಣವೇನು?” | قَالَ يَٰٓإِبۡلِيسُ مَا لَكَ أَلَّا تَكُونَ مَعَ ٱلسَّٰجِدِينَ ٣٢ |
| 33. | ಅವನು ಹೇಳಿದನು: “ನೀನು ಕಪ್ಪು, (ತಟ್ಟಿದರೆ) ಸದ್ದು ಮಾಡುವ, ಬದಲಾದ ಒಣ ಜೇಡಿಮಣ್ಣಿನಿಂದ ಸೃಷ್ಟಿಸಿದ ಈ ಮಾನವನಿಗೆ ನಾನು ಸಾಷ್ಟಾಂಗ ಮಾಡಬೇಕಾದವನಲ್ಲ.” | قَالَ لَمۡ أَكُن لِّأَسۡجُدَ لِبَشَرٍ خَلَقۡتَهُۥ مِن صَلۡصَٰلٖ مِّنۡ حَمَإٖ مَّسۡنُونٖ ٣٣ |
| 34. | ಅಲ್ಲಾಹು ಹೇಳಿದನು: “ಇಲ್ಲಿಂದ ಹೊರಟುಹೋಗು. ನಿಜಕ್ಕೂ ನೀನು ಬಹಿಷ್ಕೃತನಾಗಿರುವೆ. | قَالَ فَٱخۡرُجۡ مِنۡهَا فَإِنَّكَ رَجِيمٞ ٣٤ |
| 35. | ಪ್ರತಿಫಲದ ದಿನದ ತನಕ ನಿನ್ನ ಮೇಲೆ ಶಾಪವಿದೆ.” | وَإِنَّ عَلَيۡكَ ٱللَّعۡنَةَ إِلَىٰ يَوۡمِ ٱلدِّينِ ٣٥ |
| 36. | ಅವನು ಹೇಳಿದನು: “ಓ ನನ್ನ ಪರಿಪಾಲಕನೇ! ಅವರನ್ನು ಜೀವಂತ ಎಬ್ಬಿಸಲಾಗುವ ದಿನದ ತನಕ ನನಗೆ ಕಾಲಾವಕಾಶ ನೀಡು.” | قَالَ رَبِّ فَأَنظِرۡنِيٓ إِلَىٰ يَوۡمِ يُبۡعَثُونَ ٣٦ |
| 37. | ಅಲ್ಲಾಹು ಹೇಳಿದನು: “ಸರಿ. ನಿನ್ನನ್ನು ಕಾಲಾವಕಾಶ ನೀಡಲಾದವರಲ್ಲಿ ಸೇರಿಸಿದ್ದೇನೆ. | قَالَ فَإِنَّكَ مِنَ ٱلۡمُنظَرِينَ ٣٧ |
| 38. | ಆ ನಿಗದಿತ ಸಮಯದ ದಿನದ ತನಕ.” | إِلَىٰ يَوۡمِ ٱلۡوَقۡتِ ٱلۡمَعۡلُومِ ٣٨ |

39. ಅವನು ಹೇಳಿದನು: “ಓ ನನ್ನ ಪರಿಪಾಲಕನೇ! ನೀನು ನನ್ನನ್ನು ದಾರಿತಪ್ಪಿಸಿದ ಕಾರಣ, ಭೂಮಿಯಲ್ಲಿ ನಾನು ಅವರೆಲ್ಲರಿಗೂ ಪಾಪಗಳನ್ನು ಅಂದವಾಗಿ ತೋರಿಸಿಕೊಡುವೆನು ಮತ್ತು ಅವರೆಲ್ಲರನ್ನೂ ದಾರಿತಪ್ಪಿಸುವೆನು.

قَالَ رَبِّ بِمَآ أَغۡوَيۡتَنِي لَأُزَيِّنَنَّ لَهُمۡ فِي ٱلۡأَرۡضِ
وَلَأُغۡوِيَنَّهُمۡ أَجۡمَعِينَ ٣٩

40. ಅವರಲ್ಲಿರುವ ನಿನ್ನ ನಿಷ್ಕಳಂಕ ದಾಸರ ಹೊರತು.”

إِلَّا عِبَادَكَ مِنۡهُمُ ٱلۡمُخۡلَصِينَ ٤٠

41. ಅಲ್ಲಾಹು ಹೇಳಿದನು: “ಇದು ನನ್ನ ಬಳಿಗೆ ತಲುಪುವ ನೇರ ಮಾರ್ಗವಾಗಿದೆ.

قَالَ هَٰذَا صِرَٰطٌ عَلَيَّ مُسۡتَقِيمٌ ٤١

42. ನಿಶ್ಚಯವಾಗಿಯೂ, ನನ್ನ ದಾಸರ ಮೇಲೆ ನಿನಗೆ ಯಾವುದೇ ಅಧಿಕಾರವಿಲ್ಲ. ಅವರಲ್ಲಿ ನಿನ್ನನ್ನು ಹಿಂಬಾಲಿಸಿದ ದುರ್ಮಾರ್ಗಿಗಳ ಹೊರತು.

إِنَّ عِبَادِي لَيۡسَ لَكَ عَلَيۡهِمۡ سُلۡطَٰنٌ إِلَّا مَنِ
ٱتَّبَعَكَ مِنَ ٱلۡغَاوِينَ ٤٢

43. ನಿಶ್ಚಯವಾಗಿಯೂ, ನರಕಾಗ್ನಿಯು ಅವರೆಲ್ಲರಿಗೂ ವಾಗ್ದಾನ ಮಾಡಲಾದ ಸ್ಥಳವಾಗಿದೆ.

وَإِنَّ جَهَنَّمَ لَمَوۡعِدُهُمۡ أَجۡمَعِينَ ٤٣

44. ಅದಕ್ಕೆ ಏಳು ದ್ವಾರಗಳಿವೆ. ಪ್ರತಿಯೊಂದು ದ್ವಾರಕ್ಕೂ ಅವರಲ್ಲಿರುವ ಒಂದು ವಿಭಾಗವನ್ನು ವಿಂಗಡಿಸಿಡಲಾಗಿದೆ.

لَهَا سَبۡعَةُ أَبۡوَٰبٖ لِّكُلِّ بَابٖ مِّنۡهُمۡ
جُزۡءٞ مَّقۡسُومٌ ٤٤

45. ನಿಶ್ಚಯವಾಗಿಯೂ, ದೇವಭಯವುಳ್ಳವರು ಉದ್ಯಾನಗಳಲ್ಲಿ ಮತ್ತು ಚಿಲುಮೆಗಳಲ್ಲಿರುತ್ತಾರೆ.

إِنَّ ٱلۡمُتَّقِينَ فِي جَنَّٰتٖ وَعُيُونٍ ٤٥

46. (ಅವರೊಡನೆ ಹೇಳಲಾಗುವುದು): “ನಿರ್ಭಯ ಮತ್ತು ಶಾಂತಿಯಿಂದ ಅದರೊಳಗೆ ಪ್ರವೇಶಿಸಿರಿ.”

ٱدۡخُلُوهَا بِسَلَٰمٍ ءَامِنِينَ ٤٦

47. ಅವರ ಹೃದಯಗಳಲ್ಲಿ ಯಾವುದೇ ರೀತಿಯ ದ್ವೇಷವಿದ್ದರೆ ನಾವು ಅದನ್ನು ತೊಲಗಿಸುವೆವು. ಅವರು ಸಹೋದರರಂತೆ ಪರಸ್ಪರ ಮುಖಾಮುಖಿಯಾಗಿ ಸಿಂಹಾಸನಗಳಲ್ಲಿ ಕುಳಿತಿರುವರು.

وَنَزَعۡنَا مَا فِي صُدُورِهِم مِّنۡ غِلٍّ إِخۡوَٰنًا عَلَىٰ
سُرُرٖ مُّتَقَٰبِلِينَ ٤٧

48. ಅಲ್ಲಿ ಅವರಿಗೆ ಯಾವುದೇ ರೀತಿಯ ಆಯಾಸ ಉಂಟಾಗುವುದಿಲ್ಲ. ಅವರನ್ನು ಅಲ್ಲಿಂದ ಹೊರದಬ್ಬಲಾಗುವುದೂ ಇಲ್ಲ.

لَا يَمَسُّهُمۡ فِيهَا نَصَبٞ وَمَا هُم مِّنۡهَا
بِمُخۡرَجِينَ ٤٨

49. ನನ್ನ ದಾಸರಿಗೆ, ನಾನು ಅತ್ಯಂತ ಕ್ಷಮಿಸುವವನು ಮತ್ತು ಅತ್ಯಧಿಕ ದಯೆ ತೋರುವವನೆಂದು ತಿಳಿಸಿ.

نَبِّئۡ عِبَادِيٓ أَنِّيٓ أَنَا ٱلۡغَفُورُ ٱلرَّحِيمُ ٤٩

50. ನನ್ನ ಶಿಕ್ಷೆಯು ಅತ್ಯಧಿಕ ನೋವಿನಿಂದ ಕೂಡಿದ ಶಿಕ್ಷೆಯಾಗಿದೆಯೆಂದೂ ತಿಳಿಸಿ.

وَأَنَّ عَذَابِي هُوَ ٱلۡعَذَابُ ٱلۡأَلِيمُ ٥٠

51. ಇಬ್ರಾಹೀಮರ ಅತಿಥಿಗಳ ಬಗ್ಗೆ ಅವರಿಗೆ ತಿಳಿಸಿ.

وَنَبِّئۡهُمۡ عَن ضَيۡفِ إِبۡرَٰهِيمَ ٥١

| | |
|---|---|
| 52. ಅವರು ಇಬ್ರಾಹೀಮರ ಬಳಿಗೆ ಬಂದು “ಸಲಾಮ್” ಎಂದು ಹೇಳಿದ ಸಂದರ್ಭ. ಇಬ್ರಾಹೀಮ್ ಹೇಳಿದರು: “ನಿಜಕ್ಕೂ ನಮಗೆ ನಿಮ್ಮ ಬಗ್ಗೆ ಭಯವಾಗುತ್ತಿದೆ.” | إِذۡ دَخَلُواْ عَلَيۡهِ فَقَالُواْ سَلَٰمٗا قَالَ إِنَّا مِنكُمۡ وَجِلُونَ ﴿٥٢﴾ |
| 53. ಅವರು ಉತ್ತರಿಸಿದರು: “ಭಯಪಡಬೇಡಿ! ನಾವು ನಿಮಗೆ ಒಬ್ಬ ಜ್ಞಾನವಂತ ಪುತ್ರನ ಜನನದ ಶುಭ ಸುದ್ದಿಯನ್ನು ತಿಳಿಸುತ್ತೇವೆ.” | قَالُواْ لَا تَوۡجَلۡ إِنَّا نُبَشِّرُكَ بِغُلَٰمٍ عَلِيمٖ ﴿٥٣﴾ |
| 54. ಇಬ್ರಾಹೀಮ್ ಕೇಳಿದರು: “ನಾನು ಇಳಿ ವಯಸ್ಸನ್ನು ತಲುಪಿದ ಬಳಿಕ ನೀವು ನನಗೆ ಶುಭ ಸುದ್ದಿ ತಿಳಿಸುತ್ತಿದ್ದೀರಾ? ನೀವು ಎಂತಹ ಶುಭ ಸುದ್ದಿ ತಿಳಿಸುತ್ತೀರಿ?” | قَالَ أَبَشَّرۡتُمُونِي عَلَىٰٓ أَن مَّسَّنِيَ ٱلۡكِبَرُ فَبِمَ تُبَشِّرُونَ ﴿٥٤﴾ |
| 55. ಅವರು ಹೇಳಿದರು: “ನಾವು ನಿಮಗೆ ಸತ್ಯವಾದ ಒಂದು ಶುಭ ಸುದ್ದಿಯನ್ನು ತಿಳಿಸುತ್ತಿದ್ದೇವೆ. ಆದ್ದರಿಂದ ನೀವು ನಿರಾಶರಾದವ-ರಲ್ಲಿ ಸೇರಬೇಡಿ.” | قَالُواْ بَشَّرۡنَٰكَ بِٱلۡحَقِّ فَلَا تَكُن مِّنَ ٱلۡقَٰنِطِينَ ﴿٥٥﴾ |
| 56. ಇಬ್ರಾಹೀಮ್ ಹೇಳಿದರು: “ತನ್ನ ಪರಿಪಾಲಕನ (ಅಲ್ಲಾಹನ) ಕರುಣೆಯ ಬಗ್ಗೆ ದಾರಿತಪ್ಪಿದವರ ಹೊರತು ಇನ್ನಾರು ನಿರಾಶರಾಗುತ್ತಾರೆ?” | قَالَ وَمَن يَقۡنَطُ مِن رَّحۡمَةِ رَبِّهِۦٓ إِلَّا ٱلضَّآلُّونَ ﴿٥٦﴾ |
| 57. ಇಬ್ರಾಹೀಮ್ ಕೇಳಿದರು: “ಓ ದೂತರೇ! ಇಲ್ಲಿ ನಿಮಗೇನು ಕೆಲಸವಿದೆಯೆಂದು ಬಂದಿದ್ದೀರಿ?” | قَالَ فَمَا خَطۡبُكُمۡ أَيُّهَا ٱلۡمُرۡسَلُونَ ﴿٥٧﴾ |
| 58. ಅವರು ಉತ್ತರಿಸಿದರು: “ನಮ್ಮನ್ನು ಅಪರಾಧಿಗಳಾದ ಜನರ ಬಳಿಗೆ ಕಳುಹಿಸಲಾಗಿದೆ. | قَالُوٓاْ إِنَّآ أُرۡسِلۡنَآ إِلَىٰ قَوۡمٖ مُّجۡرِمِينَ ﴿٥٨﴾ |
| 59. ಆದರೆ ಲೂತ್‌ರ ಕುಟುಂಬವು ಇದರಿಂದ ಹೊರತಾಗಿದೆ. ನಾವು ಅವರೆಲ್ಲರನ್ನೂ ಖಂಡಿತ ರಕ್ಷಿಸುವೆವು. | إِلَّآ ءَالَ لُوطٍ إِنَّا لَمُنَجُّوهُمۡ أَجۡمَعِينَ ﴿٥٩﴾ |
| 60. ಆದರೆ ಅವರ ಹೆಂಡತಿಯ ಹೊರತು.” ನಾವು ಅವಳನ್ನು ಬಾಕಿ-ಯಾಗುವವರಲ್ಲಿ (ಶಿಕ್ಷೆಗೆ ಗುರಿಯಾಗುವವರಲ್ಲಿ) ನಿರ್ಣಯಿಸಿದ್ದೇವೆ. | إِلَّا ٱمۡرَأَتَهُۥ قَدَّرۡنَآ إِنَّهَا لَمِنَ ٱلۡغَٰبِرِينَ ﴿٦٠﴾ |
| 61. ನಂತರ ಆ ದೂತರು ಲೂತರ ಕುಟುಂಬದವರ ಬಳಿಗೆ ಬಂದಾಗ, | فَلَمَّا جَآءَ ءَالَ لُوطٍ ٱلۡمُرۡسَلُونَ ﴿٦١﴾ |
| 62. ಲೂತ್ ಹೇಳಿದರು: “ನಿಜಕ್ಕೂ ನೀವು ಅಪರಿಚಿತ ಜನರಂತೆ ಕಾಣುತ್ತೀರಿ.” | قَالَ إِنَّكُمۡ قَوۡمٞ مُّنكَرُونَ ﴿٦٢﴾ |
| 63. ಅವರು ಉತ್ತರಿಸಿದರು: “ಅಲ್ಲ, ವಾಸ್ತವವಾಗಿ ಈ ಜನರು ಯಾವುದರ ಬಗ್ಗೆ ಸಂಶಯಪಡುತ್ತಿದ್ದಾರೋ ಅದನ್ನೇ ನಾವು ತಂದಿದ್ದೇವೆ. | قَالُواْ بَلۡ جِئۡنَٰكَ بِمَا كَانُواْ فِيهِ يَمۡتَرُونَ ﴿٦٣﴾ |
| 64. ನಾವು ನಿಮ್ಮ ಬಳಿಗೆ ಸತ್ಯದೊಂದಿಗೆ ಬಂದಿದ್ದೇವೆ. | وَأَتَيۡنَٰكَ بِٱلۡحَقِّ وَإِنَّا لَصَٰدِقُونَ ﴿٦٤﴾ |

ನಿಶ್ಚಯವಾಗಿಯೂ ನಾವು ಸತ್ಯವಂತರಾಗಿದ್ದೇವೆ.

---

65. ಆದ್ದರಿಂದ ರಾತ್ರಿಯ ಒಂದು ಭಾಗದಲ್ಲಿ ನೀವು ತಮ್ಮ ಕುಟುಂಬ ಸಮೇತ ಇಲ್ಲಿಂದ ಹೊರಡಿ. ನೀವು ಅವರನ್ನು (ಕುಟುಂಬವನ್ನು) ಹಿಂದಿನಿಂದ ಹಿಂಬಾಲಿಸಿರಿ. ನಿಮ್ಮಲ್ಲಿ ಯಾರೂ ಹಿಂದಿರುಗಿ ನೋಡದಿರಲಿ. ನಿಮಗೆ ಆದೇಶಿಸಲಾಗುವ ಕಡೆಗೆ ಸಾಗಿರಿ."

فَأَسۡرِ بِأَهۡلِكَ بِقِطۡعٖ مِّنَ ٱلَّيۡلِ وَٱتَّبِعۡ أَدۡبَٰرَهُمۡ وَلَا يَلۡتَفِتۡ مِنكُمۡ أَحَدٞ وَٱمۡضُواْ حَيۡثُ تُؤۡمَرُونَ ﴿٦٥﴾

---

66. ನಾವು ಲೂತರಿಗೆ ಆ ವಿಷಯದ ತೀರ್ಮಾನವನ್ನು ತಿಳಿಸಿದೆವು—ಅದೇನೆಂದರೆ, ಬೆಳಗಾಗುತ್ತಿದ್ದಂತೆ ಇವರ ಬುಡವನ್ನೇ ಕತ್ತರಿಸಿ ಬಿಡಲಾಗುವುದೆಂದು.

وَقَضَيۡنَآ إِلَيۡهِ ذَٰلِكَ ٱلۡأَمۡرَ أَنَّ دَابِرَ هَٰٓؤُلَآءِ مَقۡطُوعٞ مُّصۡبِحِينَ ﴿٦٦﴾

---

67. ನಗರ ವಾಸಿಗಳು ಕೇಕೆ ಹಾಕುತ್ತಾ ಬಂದರು.

وَجَآءَ أَهۡلُ ٱلۡمَدِينَةِ يَسۡتَبۡشِرُونَ ﴿٦٧﴾

---

68. ಲೂತ್ ಹೇಳಿದರು: "ಇವರು ನನ್ನ ಅತಿಥಿಗಳು! ದಯವಿಟ್ಟು ನನಗೆ ಅವಮಾನ ಮಾಡಬೇಡಿ.

قَالَ إِنَّ هَٰٓؤُلَآءِ ضَيۡفِي فَلَا تَفۡضَحُونِ ﴿٦٨﴾

---

69. ಅಲ್ಲಾಹನನ್ನು ಭಯಪಡಿರಿ. ನನ್ನನ್ನು ತಮಾಷೆ ಮಾಡಬೇಡಿ."

وَٱتَّقُواْ ٱللَّهَ وَلَا تُخۡزُونِ ﴿٦٩﴾

---

70. ಅವರು ಹೇಳಿದರು: "ಜಗತ್ತಿನಲ್ಲಿರುವವರ ವಿಷಯದಲ್ಲಿ (ಹಸ್ತಕ್ಷೇಪ ಮಾಡಬಾರದೆಂದು) ನಾವು ನಿನ್ನನ್ನು ತಡೆದಿಲ್ಲವೇ?"

قَالُوٓاْ أَوَلَمۡ نَنۡهَكَ عَنِ ٱلۡعَٰلَمِينَ ﴿٧٠﴾

---

71. ಲೂತ್ ಹೇಳಿದರು: "ನಿಮಗೆ ಅದನ್ನು ಮಾಡಲೇಬೇಕೆಂದಿದ್ದರೆ ಇಲ್ಲಿ ನನ್ನ ಹೆಣ್ಣುಮಕ್ಕಳಿದ್ದಾರೆ."

قَالَ هَٰٓؤُلَآءِ بَنَاتِيٓ إِن كُنتُمۡ فَٰعِلِينَ ﴿٧١﴾

---

72. (ಪ್ರವಾದಿಯವರೇ) ನಿಮ್ಮ ಆಯುಷ್ಯದ ಮೇಲಾಣೆ! ಅವರು ಕಾಮೋನ್ಮಾದದಿಂದ ಅಂಧರಾಗಿ ಅಲೆಯುತ್ತಿದ್ದರು.

لَعَمۡرُكَ إِنَّهُمۡ لَفِي سَكۡرَتِهِمۡ يَعۡمَهُونَ ﴿٧٢﴾

---

73. ಸೂರ್ಯೋದಯವಾಗುತ್ತಿದ್ದಂತೆ ಆ ಮಹಾ ಚೀತ್ಕಾರವು ಅವರನ್ನು ಹಿಡಿದುಬಿಟ್ಟಿತು.

فَأَخَذَتۡهُمُ ٱلصَّيۡحَةُ مُشۡرِقِينَ ﴿٧٣﴾

---

74. ನಂತರ ನಾವು ಆ ಊರನ್ನು ಬುಡಮೇಲು ಮಾಡಿದೆವು ಮತ್ತು ಅವರ ಮೇಲೆ ಕಲ್ಲುಗಳ ಮಳೆಯನ್ನು ಸುರಿಸಿದೆವು.

فَجَعَلۡنَا عَٰلِيَهَا سَافِلَهَا وَأَمۡطَرۡنَا عَلَيۡهِمۡ حِجَارَةٗ مِّن سِجِّيلٍ ﴿٧٤﴾

---

75. ನಿಶ್ಚಯವಾಗಿಯೂ ಅಂತರ್ದೃಷ್ಟಿಯುಳ್ಳವರಿಗೆ ಅದರಲ್ಲಿ ಅನೇಕ ದೃಷ್ಟಾಂತಗಳಿವೆ.

إِنَّ فِي ذَٰلِكَ لَأٓيَٰتٖ لِّلۡمُتَوَسِّمِينَ ﴿٧٥﴾

---

76. ನಿಶ್ಚಯವಾಗಿಯೂ ಆ ಊರು ಸಮಾನಾಂತರದಲ್ಲಿ ಚಲಿಸುವ (ಚಿರಪರಿಚಿತ) ರಸ್ತೆಯಲ್ಲಿದೆ.

وَإِنَّهَا لَبِسَبِيلٖ مُّقِيمٍ ﴿٧٦﴾

---

77. ನಿಶ್ಚಯವಾಗಿಯೂ ಅದರಲ್ಲಿ ಸತ್ಯವಿಶ್ವಾಸಿಗಳಿಗೆ ದೃಷ್ಟಾಂತವಿದೆ.

إِنَّ فِي ذَٰلِكَ لَأٓيَةٗ لِّلۡمُؤۡمِنِينَ ﴿٧٧﴾

---

78. ಐಕತ್‌ನ ಜನರು (ಮದ್ಯನ್ ದೇಶದವರು) ಅಕ್ರಮಿಗಳಾಗಿದ್ದರು.

وَإِن كَانَ أَصۡحَٰبُ ٱلۡأَيۡكَةِ لَظَٰلِمِينَ ﴿٧٨﴾

| | |
|---|---|
| 79. ಆದ್ದರಿಂದ, ನಾವು ಅವರಿಂದ ಪ್ರತೀಕಾರ ಪಡೆದೆವು. ಈ ಎರಡು ಊರುಗಳೂ[1] ಬಯಲು ರಸ್ತೆಯಲ್ಲಿವೆ. | فَٱنتَقَمۡنَا مِنۡهُمۡ وَإِنَّهُمَا لَبِإِمَامٖ مُّبِينٖ ﴿٧٩﴾ |
| 80. ಹಿಜ್ರ್ ನಿವಾಸಿಗಳು (ಸಮೂದ್ ಗೋತ್ರದವರು) ಸಂದೇಶವಾಹಕ-ರುಗಳನ್ನು ನಿಷೇಧಿಸಿದರು. | وَلَقَدۡ كَذَّبَ أَصۡحَٰبُ ٱلۡحِجۡرِ ٱلۡمُرۡسَلِينَ ﴿٨٠﴾ |
| 81. ನಾವು ಅವರಿಗೆ ನಮ್ಮ ದೃಷ್ಟಾಂತಗಳನ್ನು ನೀಡಿದ್ದೆವು. ಆದರೆ ಅವರು ಅವುಗಳನ್ನು ಲೆಕ್ಕಿಸದೆ ವಿಮುಖರಾದರು. | وَءَاتَيۡنَٰهُمۡ ءَايَٰتِنَا فَكَانُواْ عَنۡهَا مُعۡرِضِينَ ﴿٨١﴾ |
| 82. ಅವರು ನಿರ್ಭೀತವಾಗಿ ಪರ್ವತಗಳನ್ನು ಕೊರೆದು ಮನೆಗಳನ್ನು ನಿರ್ಮಿಸುತ್ತಿದ್ದರು. | وَكَانُواْ يَنۡحِتُونَ مِنَ ٱلۡجِبَالِ بُيُوتًا ءَامِنِينَ ﴿٨٢﴾ |
| 83. ಆಗ ಬೆಳಗ್ಗಿನ ವೇಳೆ ಆ ಮಹಾ ಚೀತ್ಕಾರವು ಅವರನ್ನು ಹಿಡಿದುಬಿಟ್ಟಿತು. | فَأَخَذَتۡهُمُ ٱلصَّيۡحَةُ مُصۡبِحِينَ ﴿٨٣﴾ |
| 84. ಅವರ ಯಾವುದೇ ಕರ್ಮಗಳು ಅವರಿಗೆ ಉಪಕಾರ ಮಾಡಲಿಲ್ಲ. | فَمَآ أَغۡنَىٰ عَنۡهُم مَّا كَانُواْ يَكۡسِبُونَ ﴿٨٤﴾ |
| 85. ನಾವು ಭೂಮ್ಯಾಕಾಶಗಳನ್ನು ಮತ್ತು ಅವುಗಳ ನಡುವೆಯಿರುವ ವಸ್ತುಗಳನ್ನು ಸತ್ಯದೊಂದಿಗೇ ಸೃಷ್ಟಿಸಿದ್ದೇವೆ. ಅಂತ್ಯಸಮಯವು ಖಂಡಿತ ಬಂದೇ ಬರುತ್ತದೆ. ಆದ್ದರಿಂದ ನೀವು ಅತಿಸುಂದರವಾದ ರೀತಿಯಲ್ಲಿ ಕ್ಷಮಿಸಿಬಿಡಿ. | وَمَا خَلَقۡنَا ٱلسَّمَٰوَٰتِ وَٱلۡأَرۡضَ وَمَا بَيۡنَهُمَآ إِلَّا بِٱلۡحَقِّۗ وَإِنَّ ٱلسَّاعَةَ لَأٓتِيَةٞۖ فَٱصۡفَحِ ٱلصَّفۡحَ ٱلۡجَمِيلَ ﴿٨٥﴾ |
| 86. ನಿಶ್ಚಯವಾಗಿಯೂ, ನಿಮ್ಮ ಪರಿಪಾಲಕನು (ಅಲ್ಲಾಹು) ಸೃಷ್ಟಿಕರ್ತನು ಮತ್ತು ಸರ್ವಜ್ಞನಾಗಿದ್ದಾನೆ. | إِنَّ رَبَّكَ هُوَ ٱلۡخَلَّٰقُ ٱلۡعَلِيمُ ﴿٨٦﴾ |
| 87. ನಾವು ನಿಮಗೆ ಪುನರಾವರ್ತಿಸಿ ಪಠಿಸಲಾಗುವ ಏಳು ವಚನಗಳನ್ನು[2] ಮತ್ತು ಶ್ರೇಷ್ಠ ಕುರ್‌ಆನನ್ನು ನೀಡಿದ್ದೇವೆ. | وَلَقَدۡ ءَاتَيۡنَٰكَ سَبۡعٗا مِّنَ ٱلۡمَثَانِي وَٱلۡقُرۡءَانَ ٱلۡعَظِيمَ ﴿٨٧﴾ |
| 88. ಅವರಲ್ಲಿರುವ ಪಂಗಡಗಳಿಗೆ ನಾವು ಏನೇನು ಸವಲತ್ತುಗಳನ್ನು ಒದಗಿಸಿದ್ದೇವೆಯೋ ಅದರ ಕಡೆಗೆ ನೀವು ನಿಮ್ಮ ದೃಷ್ಟಿಯನ್ನು ಹರಿಸಬೇಡಿ. ಅವರ ವಿಷಯದಲ್ಲಿ ಬೇಸರಪಡಬೇಡಿ. ಸತ್ಯವಿಶ್ವಾಸಿ-ಗಳಿಗೆ ನಿಮ್ಮ ರೆಕ್ಕೆಗಳನ್ನು ತಗ್ಗಿಸಿಕೊಡಿ. | لَا تَمُدَّنَّ عَيۡنَيۡكَ إِلَىٰ مَا مَتَّعۡنَا بِهِۦٓ أَزۡوَٰجٗا مِّنۡهُمۡ وَلَا تَحۡزَنۡ عَلَيۡهِمۡ وَٱخۡفِضۡ جَنَاحَكَ لِلۡمُؤۡمِنِينَ ﴿٨٨﴾ |
| 89. ಹೇಳಿರಿ: “ನಿಶ್ಚಯವಾಗಿಯೂ ನಾನೊಬ್ಬ ಸ್ಪಷ್ಟ ಮುನ್ನೆಚ್ಚರಿಕೆಗಾರನಾಗಿದ್ದೇನೆ.” | وَقُلۡ إِنِّيٓ أَنَا ٱلنَّذِيرُ ٱلۡمُبِينُ ﴿٨٩﴾ |
| 90. ವಿಂಗಡನೆ ಮಾಡಿದವರ ಮೇಲೆ ನಾವು (ಶಿಕ್ಷೆಯನ್ನು) ಇಳಿಸಿದಂತೆ, | كَمَآ أَنزَلۡنَا عَلَى ٱلۡمُقۡتَسِمِينَ ﴿٩٠﴾ |

[1] ಲೂತ್ (ಅವರ ಮೇಲೆ ಶಾಂತಿಯಿರಲಿ) ವಾಸವಾಗಿದ್ದ ಸದೂಮ್ ಮತ್ತು ಐಕತ್‌ನವರು ವಾಸವಾಗಿದ್ದ ಮದ್ಯನ್.

[2] ಪುನರಾವರ್ತಿಸಿ ಪಠಿಸಲಾಗುವ ಏಳು ವಚನಗಳು ಎಂದರೆ ಸೂರ ಫಾತಿಹ.

91. ಅಂದರೆ ಕುರ್‌ಆನನ್ನು ವಿವಿಧ ಭಾಗಗಳನ್ನಾಗಿ ಮಾಡಿದವರ ಮೇಲೆ.[1]

ٱلَّذِينَ جَعَلُواْ ٱلْقُرْءَانَ عِضِينَ ﴿٩١﴾

92. ನಿಮ್ಮ ಪರಿಪಾಲಕನ (ಅಲ್ಲಾಹನ) ಮೇಲಾಣೆ! ನಾವು ಅವರಲ್ಲಿ ಎಲ್ಲರನ್ನೂ ಖಂಡಿತ ವಿಚಾರಣೆ ಮಾಡುವೆವು.

فَوَرَبِّكَ لَنَسْـَٔلَنَّهُمْ أَجْمَعِينَ ﴿٩٢﴾

93. ಅವರು ಮಾಡುತ್ತಿದ್ದ ಕರ್ಮಗಳ ಬಗ್ಗೆ.

عَمَّا كَانُواْ يَعْمَلُونَ ﴿٩٣﴾

94. ಆದ್ದರಿಂದ ನಿಮಗೆ ಆಜ್ಞಾಪಿಸಲಾಗುವುದನ್ನು ಬಹಿರಂಗವಾಗಿ ಘೋಷಿಸಿರಿ ಮತ್ತು ಬಹುದೇವಾರಾಧಕರಿಂದ ವಿಮುಖರಾಗಿರಿ.

فَٱصْدَعْ بِمَا تُؤْمَرُ وَأَعْرِضْ عَنِ ٱلْمُشْرِكِينَ ﴿٩٤﴾

95. ನಿಮ್ಮನ್ನು ತಮಾಷೆ ಮಾಡುವವರನ್ನು ನೋಡಿಕೊಳ್ಳಲು ನಿಮಗೆ ನಾವು ಸಾಕು.

إِنَّا كَفَيْنَٰكَ ٱلْمُسْتَهْزِءِينَ ﴿٩٥﴾

96. ಅವರು ಯಾರೆಂದರೆ, ಅಲ್ಲಾಹನೊಂದಿಗೆ ಬೇರೆ ದೇವರುಗಳನ್ನು ಸ್ಥಾಪಿಸುವವರು. ಅವರು ಸದ್ಯವೇ ತಿಳಿದುಕೊಳ್ಳುವರು.

ٱلَّذِينَ يَجْعَلُونَ مَعَ ٱللَّهِ إِلَٰهًا ءَاخَرَ ۚ فَسَوْفَ يَعْلَمُونَ ﴿٩٦﴾

97. (ಪ್ರವಾದಿಯವರೇ) ಅವರು ಹೇಳುವ ಮಾತುಗಳಿಂದ ನಿಮ್ಮ ಹೃದಯವು ಇಕ್ಕಟ್ಟು ಅನುಭವಿಸುತ್ತಿದೆಯೆಂದು ನಮಗೆ ತಿಳಿದಿದೆ.

وَلَقَدْ نَعْلَمُ أَنَّكَ يَضِيقُ صَدْرُكَ بِمَا يَقُولُونَ ﴿٩٧﴾

98. ಆದ್ದರಿಂದ ನೀವು ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಸ್ತುತಿಸುತ್ತಾ ಅವನ ಪರಿಶುದ್ಧತೆಯನ್ನು ಕೊಂಡಾಡಿರಿ ಮತ್ತು ಸಾಷ್ಟಾಂಗ ಮಾಡುವವರಲ್ಲಿ ಸೇರಿರಿ.

فَسَبِّحْ بِحَمْدِ رَبِّكَ وَكُن مِّنَ ٱلسَّٰجِدِينَ ﴿٩٨﴾

99. ಮರಣವು ಬರುವ ತನಕ ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಆರಾಧಿಸಿರಿ.

وَٱعْبُدْ رَبَّكَ حَتَّىٰ يَأْتِيَكَ ٱلْيَقِينُ ﴿٩٩﴾

---

[1] ವಿಂಗಡನೆ ಮಾಡಿದವರು ಯಾರೆಂಬ ವಿಷಯದಲ್ಲಿ ವ್ಯಾಖ್ಯಾನಕಾರರಿಗೆ ಭಿನ್ನಮತವಿದೆ. ಕೆಲವರು ಅದು ಸತ್ಯನಿಷೇಧಿಗಳು ಎಂದಿದ್ದಾರೆ. ಏಕೆಂದರೆ ಅವರು ಕುರ್‌ಆನನ್ನು ಕವಿತೆ, ಮಾಟಗಾರಿಕೆ, ಪ್ರಾಚೀನ ಕಾಲದ ಜನರ ಪುರಾಣ ಮುಂತಾದ ರೀತಿಯಲ್ಲಿ ವರ್ಣಿಸುತ್ತಾ ವಿಂಗಡಿಸಿದ್ದಾರೆ. ಇನ್ನೊಂದು ಅಭಿಪ್ರಾಯದ ಪ್ರಕಾರ ಅವರು ಯಹೂದಿ-ಕ್ರೈಸ್ತರಾಗಿದ್ದಾರೆ. ಏಕೆಂದರೆ, ಅವರು ಅವರಿಗೆ ಅವತೀರ್ಣವಾದ ದೈವಿಕ ಗ್ರಂಥವನ್ನು ಹಲವು ವಿಭಾಗಗಳಾಗಿ ವಿಂಗಡಿಸಿ ತಮಗೆ ಬೇಕಾದುದನ್ನು ಸ್ವೀಕರಿಸಿದರು ಮತ್ತು ಬೇಡದ್ದನ್ನು ತಿರಸ್ಕರಿಸಿದರು.

# 16. ಅನ್ನಹ್ಲ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

---

1. ಅಲ್ಲಾಹನ ಆಜ್ಞೆಯು ಬಂದಿದೆ. ಆದ್ದರಿಂದ ಅದಕ್ಕಾಗಿ ತ್ವರೆ ಮಾಡಬೇಡಿ. ಅವರು ಮಾಡುವ ಸಹಭಾಗಿತ್ವ (ಶಿರ್ಕ್) ದಿಂದ ಅಲ್ಲಾಹು ಎಷ್ಟೋ ಪರಿಶುದ್ಧನು ಮತ್ತು ಪರಮೋನ್ನತನಾಗಿದ್ದಾನೆ.

أَتَىٰٓ أَمۡرُ ٱللَّهِ فَلَا تَسۡتَعۡجِلُوهُۚ سُبۡحَٰنَهُۥ وَتَعَٰلَىٰ عَمَّا يُشۡرِكُونَ ١

---

2. "ನನ್ನ ಹೊರತು ಆರಾಧಿಸಲು ಅರ್ಹರಾದ ಬೇರೆ ದೇವರಿಲ್ಲ, ಆದ್ದರಿಂದ ನನ್ನನ್ನು ಭಯಪಡಲು ಜನರಿಗೆ ಎಚ್ಚರಿಕೆ ನೀಡಿರಿ" ಎಂಬ ಸಂದೇಶದೊಂದಿಗೆ, ಅವನು ತನ್ನ ದಾಸರಲ್ಲಿ ತಾನು ಇಚ್ಛಿಸುವವರ ಮೇಲೆ ತನ್ನ ಆಜ್ಞೆಯಂತೆ ದೇವವಾಣಿಯ ಸಹಿತ ದೇವದೂತರುಗಳನ್ನು ಇಳಿಸುತ್ತಾನೆ.

يُنَزِّلُ ٱلۡمَلَٰٓئِكَةَ بِٱلرُّوحِ مِنۡ أَمۡرِهِۦ عَلَىٰ مَن يَشَآءُ مِنۡ عِبَادِهِۦٓ أَنۡ أَنذِرُوٓاْ أَنَّهُۥ لَآ إِلَٰهَ إِلَّآ أَنَا۠ فَٱتَّقُونِ ٢

---

3. ಅವನು ಭೂಮ್ಯಾಕಾಶಗಳನ್ನು ಸತ್ಯದೊಂದಿಗೇ ಸೃಷ್ಟಿಸಿದ್ದಾನೆ. ಅವರು ಮಾಡುವ ಸಹಭಾಗಿತ್ವ (ಶಿರ್ಕ್) ದಿಂದ ಅವನು ಎಷ್ಟೋ ಪರಮೋನ್ನತನಾಗಿದ್ದಾನೆ.

خَلَقَ ٱلسَّمَٰوَٰتِ وَٱلۡأَرۡضَ بِٱلۡحَقِّۚ تَعَٰلَىٰ عَمَّا يُشۡرِكُونَ ٣

---

4. ಅವನು ಮಾನವನನ್ನು ವೀರ್ಯದಿಂದ ಸೃಷ್ಟಿಸಿದನು. ನಂತರ ಅಗೋ! ಮಾನವನು ಸ್ಪಷ್ಟ ಎದುರಾಳಿಯಾಗಿ ಬಿಟ್ಟಿದ್ದಾನೆ!

خَلَقَ ٱلۡإِنسَٰنَ مِن نُّطۡفَةٖ فَإِذَا هُوَ خَصِيمٞ مُّبِينٞ ٤

---

5. ಅವನು ಜಾನುವಾರುಗಳನ್ನು ಸಹ ಸೃಷ್ಟಿಸಿದನು. ಅವುಗಳಲ್ಲಿ ನಿಮಗೆ ಬೆಚ್ಚಗಿನ ಉಡುಪುಗಳಿವೆ. ಬೇರೆಯೂ ಪ್ರಯೋಜನಗಳಿವೆ. ಅವುಗಳನ್ನು ನೀವು ಆಹಾರವಾಗಿಯೂ ಸೇವಿಸುತ್ತೀರಿ.

وَٱلۡأَنۡعَٰمَ خَلَقَهَاۖ لَكُمۡ فِيهَا دِفۡءٞ وَمَنَٰفِعُ وَمِنۡهَا تَأۡكُلُونَ ٥

---

6. ನೀವು ಅವುಗಳನ್ನು ಮೇಯಿಸಿ ಮುಸ್ಸಂಜೆ ಮರಳಿ ಕರೆತರುವಾಗ ಮತ್ತು ಅವುಗಳನ್ನು ಮೇಯಲು ಮುಂಜಾನೆ ಕರೆದುಕೊಂಡು ಹೋಗುವಾಗ ನಿಮಗೆ ಅವುಗಳಲ್ಲಿ ಸೌಂದರ್ಯವಿದೆ.

وَلَكُمۡ فِيهَا جَمَالٌ حِينَ تُرِيحُونَ وَحِينَ تَسۡرَحُونَ ٦

---

7. ನೀವು ಬಹಳ ಕಷ್ಟದಿಂದಲೇ ಹೊರತು ತಲುಪಲು ಸಾಧ್ಯ-ವಿಲ್ಲದಂತಹ ದೇಶಗಳಿಗೆ ಅವು ನಿಮ್ಮ ಭಾರಗಳನ್ನು ಹೊತ್ತು ಸಾಗುತ್ತವೆ. ನಿಜಕ್ಕೂ ನಿಮ್ಮ ಪರಿಪಾಲಕನು (ಅಲ್ಲಾಹು) ಸಹಾನು-ಭೂತಿಯುಳ್ಳವನು ಮತ್ತು ದಯೆ ತೋರುವವನಾಗಿದ್ದಾನೆ.

وَتَحۡمِلُ أَثۡقَالَكُمۡ إِلَىٰ بَلَدٖ لَّمۡ تَكُونُواْ بَٰلِغِيهِ إِلَّا بِشِقِّ ٱلۡأَنفُسِۚ إِنَّ رَبَّكُمۡ لَرَءُوفٞ رَّحِيمٞ ٧

---

8. ಅವನು ಕುದುರೆಗಳನ್ನು, ಹೇಸರಗತ್ತೆಗಳನ್ನು ಮತ್ತು ಕತ್ತೆಗಳನ್ನು ಸೃಷ್ಟಿಸಿದನು. ನೀವು ಅವುಗಳ ಮೇಲೆ ಸವಾರಿ ಮಾಡುವುದಕ್ಕಾಗಿ ಮತ್ತು ನಿಮಗೊಂದು ಅಲಂಕಾರವಾಗಿ. ನೀವು ತಿಳಿಯದೇ

وَٱلۡخَيۡلَ وَٱلۡبِغَالَ وَٱلۡحَمِيرَ لِتَرۡكَبُوهَا وَزِينَةٗۚ وَيَخۡلُقُ مَا لَا تَعۡلَمُونَ ٨

ಇರುವುದನ್ನೂ ಅವನು ಸೃಷ್ಟಿಸುತ್ತಾನೆ.

9. ನೇರ ಮಾರ್ಗವನ್ನು ತೋರಿಸಿಕೊಡುವುದು ಅಲ್ಲಾಹನ ಹೊಣೆಯಾಗಿದೆ. ಅವುಗಳಲ್ಲಿ ಕೆಲವು ವಕ್ರ ಮಾರ್ಗಗಳಿವೆ. ಅವನು ಇಚ್ಛಿಸುತ್ತಿದ್ದರೆ ನಿಮ್ಮೆಲ್ಲರಿಗೂ ಸನ್ಮಾರ್ಗ ತೋರಿಸುತ್ತಿದ್ದನು.

وَعَلَى ٱللَّهِ قَصْدُ ٱلسَّبِيلِ وَمِنْهَا جَآئِرٌۚ وَلَوْ شَآءَ لَهَدَىٰكُمْ أَجْمَعِينَ ٩

10. ಅವನೇ ಆಕಾಶದಿಂದ ಮಳೆಯನ್ನು ಇಳಿಸಿದವನು. ಅದರಲ್ಲಿ ನಿಮಗೆ ಕುಡಿಯುವ ನೀರಿದೆ. ಅದರಿಂದ ಉಂಟಾದ ಹುಲ್ಲುಗಾವಲುಗಳಲ್ಲಿ ನೀವು ನಿಮ್ಮ ಜಾನುವಾರುಗಳನ್ನು ಮೇಯಿಸುತ್ತೀರಿ.

هُوَ ٱلَّذِىٓ أَنزَلَ مِنَ ٱلسَّمَآءِ مَآءًۖ لَّكُم مِّنْهُ شَرَابٌ وَمِنْهُ شَجَرٌ فِيهِ تُسِيمُونَ ١٠

11. ಅವನು ಅದರ (ನೀರಿನ) ಮೂಲಕ ನಿಮಗೆ ಪೈರುಗಳನ್ನು, ಆಲಿವ್, ಖರ್ಜೂರ, ದ್ರಾಕ್ಷಿ ಮತ್ತು ಎಲ್ಲ ವಿಧದ ಹಣ್ಣು-ಹಂಪಲುಗಳನ್ನು ಬೆಳೆಸುತ್ತಾನೆ. ನಿಶ್ಚಯವಾಗಿಯೂ ಆಲೋಚಿಸುವ ಜನರಿಗೆ ಅದರಲ್ಲಿ ದೃಷ್ಟಾಂತವಿದೆ.

يُنۢبِتُ لَكُم بِهِ ٱلزَّرْعَ وَٱلزَّيْتُونَ وَٱلنَّخِيلَ وَٱلْأَعْنَٰبَ وَمِن كُلِّ ٱلثَّمَرَٰتِۚ إِنَّ فِى ذَٰلِكَ لَءَايَةً لِّقَوْمٍ يَتَفَكَّرُونَ ١١

12. ಅವನು ನಿಮಗೆ ರಾತ್ರಿ-ಹಗಲುಗಳನ್ನು ಮತ್ತು ಸೂರ್ಯ-ಚಂದ್ರರನ್ನು ನಿಯಂತ್ರಿಸಿಕೊಟ್ಟಿದ್ದಾನೆ. ನಕ್ಷತ್ರಗಳು ಅವನ ಆಜ್ಞೆಗೆ ವಿಧೇಯವಾಗಿವೆ. ನಿಶ್ಚಯವಾಗಿಯೂ ಅರ್ಥಮಾಡಿಕೊಳ್ಳುವ ಜನರಿಗೆ ಅದರಲ್ಲಿ ದೃಷ್ಟಾಂತಗಳಿವೆ.

وَسَخَّرَ لَكُمُ ٱلَّيْلَ وَٱلنَّهَارَ وَٱلشَّمْسَ وَٱلْقَمَرَۖ وَٱلنُّجُومُ مُسَخَّرَٰتٌۢ بِأَمْرِهِۦٓۚ إِنَّ فِى ذَٰلِكَ لَءَايَٰتٍ لِّقَوْمٍ يَعْقِلُونَ ١٢

13. ಅವನು ನಿಮಗಾಗಿ ಇನ್ನೂ ಅನೇಕ ರಂಗುರಂಗಿನ ವಸ್ತುಗಳನ್ನು ಭೂಮಿಯಲ್ಲಿ ಹಬ್ಬಿಸಿದ್ದಾನೆ. ನಿಶ್ಚಯವಾಗಿಯೂ ಉಪದೇಶ ಸ್ವೀಕರಿಸುವ ಜನರಿಗೆ ಅದರಲ್ಲಿ ದೃಷ್ಟಾಂತವಿದೆ.

وَمَا ذَرَأَ لَكُمْ فِى ٱلْأَرْضِ مُخْتَلِفًا أَلْوَٰنُهُۥٓۚ إِنَّ فِى ذَٰلِكَ لَءَايَةً لِّقَوْمٍ يَذَّكَّرُونَ ١٣

14. ಅವನೇ ನಿಮಗೆ ಕಡಲನ್ನು ನಿಯಂತ್ರಿಸಿಕೊಟ್ಟವನು. ಅದರಿಂದ ನೀವು ತಾಜಾ ಮಾಂಸವನ್ನು (ಮೀನು) ಸೇವಿಸುತ್ತೀರಿ ಮತ್ತು ನೀವು ಧರಿಸುವ ಆಭರಣಗಳನ್ನು ಹೊರತೆಗೆಯುತ್ತೀರಿ. ನಾವೆಗಳು ಅದರ ನೀರನ್ನು ಸೀಳುತ್ತಾ ಸಾಗುವುದನ್ನು ನೀವು ನೋಡುತ್ತೀರಿ. ನೀವು ಅವನ (ಅಲ್ಲಾಹನ) ಅನುಗ್ರಹವನ್ನು ಅರಸುವುದಕ್ಕಾಗಿ ಮತ್ತು ಕೃತಜ್ಞರಾಗುವುದಕ್ಕಾಗಿ (ಇವೆಲ್ಲವನ್ನೂ ನಿಯಂತ್ರಿಸಿಕೊಡಲಾಗಿದೆ).

وَهُوَ ٱلَّذِى سَخَّرَ ٱلْبَحْرَ لِتَأْكُلُوا۟ مِنْهُ لَحْمًا طَرِيًّا وَتَسْتَخْرِجُوا۟ مِنْهُ حِلْيَةً تَلْبَسُونَهَاۖ وَتَرَى ٱلْفُلْكَ مَوَاخِرَ فِيهِ وَلِتَبْتَغُوا۟ مِن فَضْلِهِۦ وَلَعَلَّكُمْ تَشْكُرُونَ ١٤

15. ಭೂಮಿಯು ನಿಮ್ಮೊಂದಿಗೆ ಅಲುಗಾಡದಿರಲು ಅವನು ಅದರಲ್ಲಿ ದೃಢವಾಗಿ ನಿಲ್ಲುವ ಪರ್ವತಗಳನ್ನು ಸ್ಥಾಪಿಸಿದನು. ಅವನು ನದಿಗಳನ್ನು ಮತ್ತು ರಸ್ತೆಗಳನ್ನು ಮಾಡಿಕೊಟ್ಟನು. ನೀವು ಉದ್ದೇಶಿತ ಸ್ಥಳಕ್ಕೆ ತಲುಪುವುದಕ್ಕಾಗಿ.

وَأَلْقَىٰ فِى ٱلْأَرْضِ رَوَٰسِىَ أَن تَمِيدَ بِكُمْ وَأَنْهَٰرًا وَسُبُلًا لَّعَلَّكُمْ تَهْتَدُونَ ١٥

16. ಅವನು ಇನ್ನೂ ಅನೇಕ ಚಿಹ್ನೆಗಳನ್ನು ಮಾಡಿಕೊಟ್ಟನು. ನಕ್ಷತ್ರಗಳ ಮೂಲಕವೂ ಅವರು (ಜನರು) ದಾರಿಯನ್ನು

وَعَلَٰمَٰتٍۚ وَبِٱلنَّجْمِ هُمْ يَهْتَدُونَ ١٦

ಕಂಡುಹಿಡಿಯುತ್ತಾರೆ.

---

17. ಹಾಗಾದರೆ, ಸೃಷ್ಟಿಸುವವನು ಸೃಷ್ಟಿಸದವನಂತೆ ಆಗುವನೇ? ಆದರೂ ನೀವು ಉಪದೇಶ ಸ್ವೀಕರಿಸುವುದಿಲ್ಲವೇ?

أَفَمَن يَخۡلُقُ كَمَن لَّا يَخۡلُقُۚ أَفَلَا تَذَكَّرُونَ ﴿١٧﴾

---

18. ನೀವು ಅಲ್ಲಾಹನ ಅನುಗ್ರಹಗಳನ್ನು ಎಣಿಸುವುದಾದರೆ ಅವುಗಳನ್ನು ಲೆಕ್ಕ ಮಾಡಲು ನಿಮಗೆ ಸಾಧ್ಯವಿಲ್ಲ. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

وَإِن تَعُدُّواْ نِعۡمَةَ ٱللَّهِ لَا تُحۡصُوهَآۗ إِنَّ ٱللَّهَ لَغَفُورٞ رَّحِيمٞ ﴿١٨﴾

---

19. ನೀವು ರಹಸ್ಯವಾಗಿಡುವುದನ್ನು ಮತ್ತು ಬಹಿರಂಗಪಡಿಸುವುದನ್ನು ಅಲ್ಲಾಹು ತಿಳಿಯುತ್ತಾನೆ.

وَٱللَّهُ يَعۡلَمُ مَا تُسِرُّونَ وَمَا تُعۡلِنُونَ ﴿١٩﴾

---

20. ಅವರು ಅಲ್ಲಾಹನನ್ನು ಬಿಟ್ಟು ಯಾರನ್ನೆಲ್ಲಾ ಕರೆದು ಪ್ರಾರ್ಥಿಸುತ್ತಾರೋ ಅವರು ಏನೂ ಸೃಷ್ಟಿಸುವುದಿಲ್ಲ. ವಾಸ್ತವವಾಗಿ, ಅವರೇ ಸೃಷ್ಟಿಗಳಾಗಿದ್ದಾರೆ.

وَٱلَّذِينَ يَدۡعُونَ مِن دُونِ ٱللَّهِ لَا يَخۡلُقُونَ شَيۡـٔٗا وَهُمۡ يُخۡلَقُونَ ﴿٢٠﴾

---

21. ಅವರು ನಿರ್ಜೀವಿಗಳು; ಜೀವವಿರುವವರಲ್ಲ. ಅವರನ್ನು ಯಾವಾಗ ಜೀವ ನೀಡಿ ಎಬ್ಬಿಸಲಾಗುವುದೆಂದು ಕೂಡ ಅವರು ತಿಳಿದಿಲ್ಲ.[1]

أَمۡوَٰتٌ غَيۡرُ أَحۡيَآءٖۖ وَمَا يَشۡعُرُونَ أَيَّانَ يُبۡعَثُونَ ﴿٢١﴾

---

22. ನಿಮ್ಮ ದೇವರು ಏಕೈಕ ದೇವರು. ಪರಲೋಕದಲ್ಲಿ ವಿಶ್ವಾ-ಸವಿಲ್ಲದವರ ಹೃದಯಗಳಲ್ಲಿ ಅಸಮ್ಮತಿಯಿದೆ.[2] ಅವರು ಅಹಂಕಾರದಿಂದ ವರ್ತಿಸುತ್ತಾರೆ.

إِلَٰهُكُمۡ إِلَٰهٞ وَٰحِدٞۚ فَٱلَّذِينَ لَا يُؤۡمِنُونَ بِٱلۡأٓخِرَةِ قُلُوبُهُم مُّنكِرَةٞ وَهُم مُّسۡتَكۡبِرُونَ ﴿٢٢﴾

---

23. ಸಂಶಯವೇ ಇಲ್ಲ! ಅವರು ಮುಚ್ಚಿಡುವುದನ್ನು ಮತ್ತು ಬಹಿರಂ-ಗಪಡಿಸುವುದನ್ನು ಅಲ್ಲಾಹು ಸ್ಪಷ್ಟವಾಗಿ ತಿಳಿಯುತ್ತಾನೆ. ಅವನು ಅಹಂಕಾರಿಗಳನ್ನು ಇಷ್ಟಪಡುವುದಿಲ್ಲ.

لَا جَرَمَ أَنَّ ٱللَّهَ يَعۡلَمُ مَا يُسِرُّونَ وَمَا يُعۡلِنُونَۚ إِنَّهُۥ لَا يُحِبُّ ٱلۡمُسۡتَكۡبِرِينَ ﴿٢٣﴾

---

24. “ನಿಮ್ಮ ಪರಿಪಾಲಕನು (ಅಲ್ಲಾಹು) ಏನನ್ನು ಅವತೀರ್ಣಗೊ-ಳಿಸಿದನು?” ಎಂದು ಅವರೊಡನೆ ಕೇಳಲಾದರೆ, “ಪ್ರಾಚೀನ ಕಾಲದ ಜನರ ಪುರಾಣಗಳನ್ನು” ಎಂದು ಅವರು ಉತ್ತರಿಸುತ್ತಾರೆ.

وَإِذَا قِيلَ لَهُم مَّاذَآ أَنزَلَ رَبُّكُمۡ قَالُوٓاْ أَسَٰطِيرُ ٱلۡأَوَّلِينَ ﴿٢٤﴾

---

[1] ನಿರ್ಜೀವಿಗಳು ಎಂದರೆ ಕಲ್ಲುಗಳು, ವಿಗ್ರಹಗಳು ಇತ್ಯಾದಿ. ಮೃತ ಮಹಾಪುರುಷರು ಕೂಡ ಇದರಲ್ಲಿ ಸೇರುತ್ತಾರೆ. ಏಕೆಂದರೆ ನಿರ್ಜೀವಿಗಳು ಎಂದು ಹೇಳಿದ ಬಳಿಕ ಅವರನ್ನು ಜೀವವಿರುವವರಲ್ಲ ಎಂದು ವರ್ಣಿಸಲಾಗಿದೆ. ಇದರಿಂದ ತಿಳಿದುಬರುವ ಪ್ರಕಾರ ಮರಣದ ನಂತರ ಯಾರಿಗೂ ಇಹಲೋಕದೊಂದಿಗೆ ಯಾವುದೇ ಸಂಬಂಧವಿರುವುದಿಲ್ಲ. ಅವರು ಪ್ರವಾದಿಗಳು ಅಥವಾ ಮಹಾಪುರುಷರಾಗಿದ್ದರೂ ಸಹ. ಅವರನ್ನು ಯಾವಾಗ ಜೀವ ನೀಡಿ ಎಬ್ಬಿಸಲಾಗುವುದೆಂದೂ ಅವರು ತಿಳಿದಿಲ್ಲ. ಹೀಗಿರುವಾಗ, ಉಪಕಾರ ಮಾಡಲು ಮತ್ತು ತೊಂದರೆ ನಿವಾರಿಸಲು ಅವರನ್ನು ಕರೆದು ಪ್ರಾರ್ಥಿಸುವುದು ವ್ಯರ್ಥ ಮಾತ್ರವಲ್ಲ, ಅದು ಅರ್ಥಶೂನ್ಯವೂ ಆಗಿದೆ.

[2] ಏಕೈಕ ದೇವನಲ್ಲಿ ವಿಶ್ವಾಸವಿಡಲು ಅವರು ಹಿಂಜರಿಯುತ್ತಾರೆ. ಮಾತ್ರವಲ್ಲ, ಏಕದೇವವಿಶ್ವಾಸದ ಕಡೆಗೆ ಕರೆದರೆ ಅವರು ಅಹಂಕಾರದಿಂದ ವರ್ತಿಸುತ್ತಾರೆ. ನೋಡಿ: 37:35.

| | | |
|---|---|---|
| 25. | ಇದರ ಪರಿಣಾಮವಾಗಿ ಪುನರುತ್ಥಾನ ದಿನದಂದು ಅವರು ತಮ್ಮ ಪಾಪದ ಹೊರೆಯನ್ನು ಪೂರ್ಣವಾಗಿ ಹೊರುತ್ತಾರೆ ಮತ್ತು ಯಾವುದೇ ಜ್ಞಾನವಿಲ್ಲದೆ ಅವರು ಯಾರನ್ನೆಲ್ಲಾ ದಾರಿ-ತಪ್ಪಿಸಿದ್ದಾರೋ ಅವರ ಪಾಪದ ಒಂದು ಭಾಗವನ್ನು ಕೂಡ ಹೊರುತ್ತಾರೆ. ತಿಳಿಯಿರಿ! ಅವರು ಹೊರುವ ಹೊರೆ ಬಹಳ ನಿಕೃಷ್ಟವಾಗಿದೆ. | لِيَحۡمِلُوٓاْ أَوۡزَارَهُمۡ كَامِلَةٗ يَوۡمَ ٱلۡقِيَٰمَةِ وَمِنۡ أَوۡزَارِ ٱلَّذِينَ يُضِلُّونَهُم بِغَيۡرِ عِلۡمٍۗ أَلَا سَآءَ مَا يَزِرُونَ ٢٥ |
| 26. | ಅವರಿಗಿಂತ ಮೊದಲಿನವರು ಕೂಡ ಪಿತೂರಿ ಮಾಡಿದ್ದರು. ಆಗ ಅಲ್ಲಾಹು ಅವರು ಕಟ್ಟಡದ ಅಡಿಪಾಯವನ್ನೇ ಅಲುಗಾಡಿಸಿದನು. ಆಗ ಅದರ ಛಾವಣಿಯು ಅವರ ತಲೆಯ ಮೇಲೆ ಕುಸಿದು ಬಿತ್ತು. ಅವರು ನಿರೀಕ್ಷಿಸದ ಕಡೆಯಿಂದ ಶಿಕ್ಷೆಯು ಅವರ ಬಳಿಗೆ ಬಂತು. | قَدۡ مَكَرَ ٱلَّذِينَ مِن قَبۡلِهِمۡ فَأَتَى ٱللَّهُ بُنۡيَٰنَهُم مِّنَ ٱلۡقَوَاعِدِ فَخَرَّ عَلَيۡهِمُ ٱلسَّقۡفُ مِن فَوۡقِهِمۡ وَأَتَىٰهُمُ ٱلۡعَذَابُ مِنۡ حَيۡثُ لَا يَشۡعُرُونَ ٢٦ |
| 27. | ನಂತರ ಪುನರುತ್ಥಾನ ದಿನದಂದು ಅವನು ಅವರನ್ನು ಅವಮಾನಿಸುತ್ತಾ ಕೇಳುವನು: "ನೀವು ನನಗೆ ಸಹಭಾಗಿಗಳಾಗಿ ಮಾಡಿದ ಆ ದೇವರುಗಳು ಎಲ್ಲಿದ್ದಾರೆ? ಅವರ ವಿಷಯದಲ್ಲಿ ನೀವು (ಸತ್ಯವಿಶ್ವಾಸಿಗಳನ್ನು) ವಿರೋಧಿಸುತ್ತಿದ್ದಿರಲ್ಲವೇ?" ಜ್ಞಾನಿಗಳು ಹೇಳುವರು: "ನಿಶ್ಚಯವಾಗಿಯೂ ಸತ್ಯನಿಷೇಧಿಗಳಿಗೆ ಇಂದು ಅವಮಾನ ಮತ್ತು ಕೆಡುಕು ಕಾದಿದೆ." | ثُمَّ يَوۡمَ ٱلۡقِيَٰمَةِ يُخۡزِيهِمۡ وَيَقُولُ أَيۡنَ شُرَكَآءِيَ ٱلَّذِينَ كُنتُمۡ تُشَٰٓقُّونَ فِيهِمۡۚ قَالَ ٱلَّذِينَ أُوتُواْ ٱلۡعِلۡمَ إِنَّ ٱلۡخِزۡيَ ٱلۡيَوۡمَ وَٱلسُّوٓءَ عَلَى ٱلۡكَٰفِرِينَ ٢٧ |
| 28. | ಅವರು ಯಾರೆಂದರೆ, ಸ್ವಯಂ ಅಕ್ರಮವೆಸಗಿದ ಸ್ಥಿತಿಯಲ್ಲಿ ದೇವದೂತರುಗಳು ಯಾರ ಆತ್ಮವನ್ನು ವಶಪಡಿಸುವರೋ ಅವರು. ಆಗ ಅವರು "ನಾವು ಯಾವುದೇ ತಪ್ಪು ಮಾಡಿಲ್ಲ" ಎನ್ನುತ್ತಾ ಶರಣಾಗುವರು. ಹೌದು! ನೀವು ಮಾಡುತ್ತಿರುವ ಕರ್ಮಗಳ ಬಗ್ಗೆ ಅಲ್ಲಾಹು ಬಹಳ ಚೆನ್ನಾಗಿ ತಿಳಿದಿದ್ದಾನೆ. | ٱلَّذِينَ تَتَوَفَّىٰهُمُ ٱلۡمَلَٰٓئِكَةُ ظَالِمِيٓ أَنفُسِهِمۡۖ فَأَلۡقَوُاْ ٱلسَّلَمَ مَا كُنَّا نَعۡمَلُ مِن سُوٓءِۭۚ بَلَىٰٓۚ إِنَّ ٱللَّهَ عَلِيمُۢ بِمَا كُنتُمۡ تَعۡمَلُونَ ٢٨ |
| 29. | ಆದ್ದರಿಂದ ನೀವು ನರಕದ ಬಾಗಿಲುಗಳನ್ನು ಪ್ರವೇಶ ಮಾಡಿರಿ. ನೀವು ಅದರಲ್ಲಿ ಶಾಶ್ವತವಾಗಿ ವಾಸಿಸುವಿರಿ. ಅಹಂಕಾರಿಗಳ ವಾಸಸ್ಥಳವು ಬಹಳ ನಿಕೃಷ್ಟವಾಗಿದೆ. | فَٱدۡخُلُوٓاْ أَبۡوَٰبَ جَهَنَّمَ خَٰلِدِينَ فِيهَاۖ فَلَبِئۡسَ مَثۡوَى ٱلۡمُتَكَبِّرِينَ ٢٩ |
| 30. | "ನಿಮ್ಮ ಪರಿಪಾಲಕನು (ಅಲ್ಲಾಹು) ಏನನ್ನು ಅವತೀರ್ಣಗೊ-ಳಿಸಿದನು?" ಎಂದು ದೇವಭಯವುಳ್ಳವರೊಡನೆ ಕೇಳಲಾದರೆ, ಅವರು ಹೇಳುವರು: "ಅತ್ಯುತ್ತಮವಾದುದನ್ನು." ಒಳಿತು ಮಾಡುವವರಿಗೆ ಇಹಲೋಕದಲ್ಲೇ ಒಳಿತಿದೆ. ಪರಲೋಕ ಭವನವಂತೂ ಅತಿಶ್ರೇಷ್ಠವಾಗಿದೆ. ದೇವಭಯವುಳ್ಳವರ ಭವನವು ಬಹಳ ಉತ್ತಮವಾಗಿದೆ. | ۞وَقِيلَ لِلَّذِينَ ٱتَّقَوۡاْ مَاذَآ أَنزَلَ رَبُّكُمۡۚ قَالُواْ خَيۡرٗاۗ لِّلَّذِينَ أَحۡسَنُواْ فِي هَٰذِهِ ٱلدُّنۡيَا حَسَنَةٞۚ وَلَدَارُ ٱلۡأٓخِرَةِ خَيۡرٞۚ وَلَنِعۡمَ دَارُ ٱلۡمُتَّقِينَ ٣٠ |

31. ತಳಭಾಗದಿಂದ ನದಿಗಳು ಹರಿಯುವ ಶಾಶ್ವತವಾಸಕ್ಕಿರುವ ಸ್ವರ್ಗೋದ್ಯಾನಗಳನ್ನು ಅವರು ಪ್ರವೇಶಿಸುವರು. ಅವರು ಇಚ್ಛಿಸುವುದೆಲ್ಲವೂ ಅಲ್ಲಿ ಅವರಿಗೆ ದೊರೆಯುವುದು. ಈ ರೀತಿ ಅಲ್ಲಾಹು ದೇವಭಯವುಳ್ಳವರಿಗೆ ಪ್ರತಿಫಲವನ್ನು ನೀಡುತ್ತಾನೆ.

جَنَّٰتُ عَدۡنٖ يَدۡخُلُونَهَا تَجۡرِي مِن تَحۡتِهَا ٱلۡأَنۡهَٰرُۖ لَهُمۡ فِيهَا مَا يَشَآءُونَۚ كَذَٰلِكَ يَجۡزِي ٱللَّهُ ٱلۡمُتَّقِينَ ٣١

32. ಪರಿಶುದ್ಧ ಜನರ ಆತ್ಮಗಳನ್ನು ವಶಪಡಿಸುವಾಗ ದೇವದೂತರುಗಳು ಹೇಳುವರು: "ನಿಮಗೆ ಶಾಂತಿಯಿರಲಿ. ನೀವು ಮಾಡಿದ ಕರ್ಮಗಳ ಫಲವಾಗಿ ಸ್ವರ್ಗಲೋಕವನ್ನು ಪ್ರವೇಶ ಮಾಡಿರಿ."

ٱلَّذِينَ تَتَوَفَّىٰهُمُ ٱلۡمَلَٰٓئِكَةُ طَيِّبِينَ يَقُولُونَ سَلَٰمٌ عَلَيۡكُمُ ٱدۡخُلُواْ ٱلۡجَنَّةَ بِمَا كُنتُمۡ تَعۡمَلُونَ ٣٢

33. ತಮ್ಮ ಬಳಿಗೆ ದೇವದೂತರುಗಳು ಬರುವುದನ್ನು ಅಥವಾ ತಮ್ಮ ಪರಿಪಾಲಕನ (ಅಲ್ಲಾಹನ) ಆಜ್ಞೆ ಬರುವುದನ್ನು ಮಾತ್ರ ಅವರು ಕಾಯುತ್ತಿದ್ದಾರೆಯೇ? ಅವರಿಗಿಂತ ಮೊದಲಿನವರು ಕೂಡ ಹೀಗೆಯೇ ಮಾಡಿದ್ದರು. ಅಲ್ಲಾಹು ಅವರಿಗೆ ಅನ್ಯಾಯ ಮಾಡಿಲ್ಲ. ಆದರೆ ಅವರು ಅವರೊಂದಿಗೇ ಅನ್ಯಾಯ ಮಾಡಿದರು.

هَلۡ يَنظُرُونَ إِلَّآ أَن تَأۡتِيَهُمُ ٱلۡمَلَٰٓئِكَةُ أَوۡ يَأۡتِيَ أَمۡرُ رَبِّكَۚ كَذَٰلِكَ فَعَلَ ٱلَّذِينَ مِن قَبۡلِهِمۡۚ وَمَا ظَلَمَهُمُ ٱللَّهُ وَلَٰكِن كَانُوٓاْ أَنفُسَهُمۡ يَظۡلِمُونَ ٣٣

34. ಆದ್ದರಿಂದ ಅವರು ಮಾಡಿದ ದುಷ್ಕರ್ಮಗಳ ಫಲವನ್ನು ಅವರು ಉಂಡರು. ಅವರು ಯಾವುದನ್ನು ತಮಾಷೆ ಮಾಡುತ್ತಿದ್ದರೋ ಅದು ಅವರನ್ನು ಆವರಿಸಿಯೇ ಬಿಟ್ಟಿತು.

فَأَصَابَهُمۡ سَيِّـَٔاتُ مَا عَمِلُواْ وَحَاقَ بِهِم مَّا كَانُواْ بِهِۦ يَسۡتَهۡزِءُونَ ٣٤

35. ಅಲ್ಲಾಹನೊಂದಿಗೆ (ಬೇರೆ ದೇವರುಗಳನ್ನು) ಸಹಭಾಗಿಗಳನ್ನಾಗಿ ಮಾಡಿದವರು ಹೇಳಿದರು: "ಅಲ್ಲಾಹು ಇಚ್ಛಿಸುತ್ತಿದ್ದರೆ ನಾವು ಅಥವಾ ನಮ್ಮ ಪೂರ್ವಜರು ಅಲ್ಲಾಹನನ್ನು ಬಿಟ್ಟು ಬೇರೆ ಯಾರನ್ನೂ ಆರಾಧಿಸುತ್ತಿರಲಿಲ್ಲ. ಅವನು ಆಜ್ಞಾಪಿಸಿದ್ದಲ್ಲದೆ ಬೇರೇನನ್ನೂ ನಾವು ನಿಷಿದ್ಧವೆನ್ನುತ್ತಿರಲಿಲ್ಲ." ಅವರಿಗಿಂತ ಮೊದಲಿನವರೂ ಹೀಗೆಯೇ ಮಾಡಿದ್ದರು. ಸಂದೇಶವಾಹಕರಿಗೆ ಸಂದೇಶವನ್ನು ತಲುಪಿಸುವುದಲ್ಲದೆ ಬೇರೇನಾದರೂ ಹೊಣೆಗಾರಿಕೆಯಿದೆಯೇ?

وَقَالَ ٱلَّذِينَ أَشۡرَكُواْ لَوۡ شَآءَ ٱللَّهُ مَا عَبَدۡنَا مِن دُونِهِۦ مِن شَيۡءٖ نَّحۡنُ وَلَآ ءَابَآؤُنَا وَلَا حَرَّمۡنَا مِن دُونِهِۦ مِن شَيۡءٖۚ كَذَٰلِكَ فَعَلَ ٱلَّذِينَ مِن قَبۡلِهِمۡۚ فَهَلۡ عَلَى ٱلرُّسُلِ إِلَّا ٱلۡبَلَٰغُ ٱلۡمُبِينُ ٣٥

36. "ಅಲ್ಲಾಹನನ್ನು ಆರಾಧಿಸಿರಿ ಮತ್ತು ಮಿಥ್ಯ ದೇವರುಗಳನ್ನು ತೊರೆಯಿರಿ" ಎಂಬ ಸಂದೇಶದೊಂದಿಗೆ ನಾವು ಎಲ್ಲಾ ಸಮುದಾಯಗಳಿಗೂ ಸಂದೇಶವಾಹಕರನ್ನು ಕಳುಹಿಸಿದ್ದೇವೆ. ಅವರಲ್ಲಿ ಕೆಲವರಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸಿದನು. ಕೆಲವರಿಗೆ ದುರ್ಮಾರ್ಗವು ಖಾತ್ರಿಯಾಗಿದೆ. ಆದ್ದರಿಂದ ನೀವು ಭೂಮಿಯಲ್ಲಿ ಸಂಚರಿಸಿ ಸತ್ಯನಿಷೇಧಿಗಳ ಅಂತ್ಯವು ಹೇಗಿತ್ತೆಂದು ನೋಡಿ.

وَلَقَدۡ بَعَثۡنَا فِي كُلِّ أُمَّةٖ رَّسُولًا أَنِ ٱعۡبُدُواْ ٱللَّهَ وَٱجۡتَنِبُواْ ٱلطَّٰغُوتَۖ فَمِنۡهُم مَّنۡ هَدَى ٱللَّهُ وَمِنۡهُم مَّنۡ حَقَّتۡ عَلَيۡهِ ٱلضَّلَٰلَةُۚ فَسِيرُواْ فِي ٱلۡأَرۡضِ فَٱنظُرُواْ كَيۡفَ كَانَ عَٰقِبَةُ ٱلۡمُكَذِّبِينَ ٣٦

37. (ಪ್ರವಾದಿಯವರೇ) ಅವರು ಸನ್ಮಾರ್ಗಿಗಳಾಗಬೇಕೆಂಬ ಹಂಬಲ ನಿಮಗಿದ್ದರೆ (ಅದು ವ್ಯರ್ಥ). ಅಲ್ಲಾಹು ಯಾರನ್ನು ದಾರಿತಪ್ಪಿಸು-ತ್ತಾನೋ ಅವನಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ. ಅವರಿಗೆ ಸಹಾಯ ಮಾಡುವವರು ಯಾರೂ ಇಲ್ಲ.

إِن تَحۡرِصۡ عَلَىٰ هُدَىٰهُمۡ فَإِنَّ ٱللَّهَ لَا يَهۡدِي مَن يُضِلُّۖ وَمَا لَهُم مِّن نَّٰصِرِينَ ﴿٣٧﴾

38. “ಅಲ್ಲಾಹು ಸತ್ತವರಿಗೆ ಜೀವ ನೀಡಿ ಎಬ್ಬಿಸುವುದಿಲ್ಲ” ಎಂದು ಅವರು ಬಲವಾಗಿ ಆಣೆ ಹಾಕುತ್ತಾ ಹೇಳಿದರು. ಹೌದು! (ಅವನು ಖಂಡಿತ ಜೀವ ನೀಡಿ ಎಬ್ಬಿಸುತ್ತಾನೆ). ಅದು ಅವನ ಸತ್ಯ ವಾಗ್ದಾನವಾಗಿದೆ. ಆದರೆ ಜನರಲ್ಲಿ ಹೆಚ್ಚಿನವರು ತಿಳಿಯುವುದಿಲ್ಲ.

وَأَقۡسَمُواْ بِٱللَّهِ جَهۡدَ أَيۡمَٰنِهِمۡ لَا يَبۡعَثُ ٱللَّهُ مَن يَمُوتُۚ بَلَىٰ وَعۡدًا عَلَيۡهِ حَقّٗا وَلَٰكِنَّ أَكۡثَرَ ٱلنَّاسِ لَا يَعۡلَمُونَ ﴿٣٨﴾

39. ಅದೇಕೆಂದರೆ, ಯಾವ ವಿಷಯದಲ್ಲಿ ಅವರು ಭಿನ್ನಮತ ತಳೆದರೋ ಅದನ್ನು ಅವರಿಗೆ ವಿವರಿಸಿಕೊಡುವುದಕ್ಕಾಗಿ ಮತ್ತು ಸತ್ಯನಿಷೇಧಿಗಳು ಸುಳ್ಳು ಹೇಳುವವರೆಂದು ಅವರು ಮನವರಿಕೆಯಾಗುವುದಕ್ಕಾಗಿ.

لِيُبَيِّنَ لَهُمُ ٱلَّذِي يَخۡتَلِفُونَ فِيهِ وَلِيَعۡلَمَ ٱلَّذِينَ كَفَرُوٓاْ أَنَّهُمۡ كَانُواْ كَٰذِبِينَ ﴿٣٩﴾

40. ನಾವು ಒಂದು ವಸ್ತುವನ್ನು ಬಯಸಿದರೆ ಅದರೊಡನೆ ನಮ್ಮ ಮಾತು “ಉಂಟಾಗು” ಎಂದು ಹೇಳುವುದು ಮಾತ್ರವಾಗಿದೆ. ಆಗ ಅದು ಉಂಟಾಗುತ್ತದೆ.

إِنَّمَا قَوۡلُنَا لِشَيۡءٍ إِذَآ أَرَدۡنَٰهُ أَن نَّقُولَ لَهُۥ كُن فَيَكُونُ ﴿٤٠﴾

41. ಹಿಂಸೆಗೆ ಗುರಿಯಾದ ಬಳಿಕವೂ ಅಲ್ಲಾಹನ ಮಾರ್ಗದಲ್ಲಿ ವಲಸೆ (ಹಿಜ್ರ) ಮಾಡಿದವರು ಯಾರೋ—ಅವರಿಗೆ ನಾವು ಇಹಲೋಕದಲ್ಲಿ ಉತ್ತಮ ವಾಸ್ತವ್ಯವನ್ನು ಮಾಡಿಕೊಡುವೆವು. ಪರಲೋಕದ ಪ್ರತಿಫಲವಂತೂ ಅತಿಶ್ರೇಷ್ಠವಾದುದು. ಅವರು ಅದನ್ನು ತಿಳಿದಿರುತ್ತಿದ್ದರೆ!

وَٱلَّذِينَ هَاجَرُواْ فِي ٱللَّهِ مِنۢ بَعۡدِ مَا ظُلِمُواْ لَنُبَوِّئَنَّهُمۡ فِي ٱلدُّنۡيَا حَسَنَةٗۖ وَلَأَجۡرُ ٱلۡأٓخِرَةِ أَكۡبَرُۚ لَوۡ كَانُواْ يَعۡلَمُونَ ﴿٤١﴾

42. ಅವರು ಯಾರೆಂದರೆ, ಸಹಿಷ್ಣುತೆಯುಳ್ಳವರು ಮತ್ತು ತಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ಭರವಸೆಯಿಡುವವರು.

ٱلَّذِينَ صَبَرُواْ وَعَلَىٰ رَبِّهِمۡ يَتَوَكَّلُونَ ﴿٤٢﴾

43. ನಿಮಗಿಂತ ಮೊದಲು ನಾವು ಸಂದೇಶವಾಹಕರನ್ನಾಗಿ ಪುರುಷರನ್ನು ಮಾತ್ರ ಕಳುಹಿಸಿದ್ದೆವು. ಅವರಿಗೆ ನಾವು ದೇವವಾಣಿಯನ್ನು ನೀಡುತ್ತಿದ್ದೆವು. ನಿಮಗೆ ಅರಿವಿಲ್ಲದಿದ್ದರೆ ವಿದ್ವಾಂಸರೊಡನೆ ಕೇಳಿ ನೋಡಿ.[1]

وَمَآ أَرۡسَلۡنَا مِن قَبۡلِكَ إِلَّا رِجَالٗا نُّوحِيٓ إِلَيۡهِمۡۖ فَسۡـَٔلُوٓاْ أَهۡلَ ٱلذِّكۡرِ إِن كُنتُمۡ لَا تَعۡلَمُونَ ﴿٤٣﴾

44. ಸ್ಪಷ್ಟ ಸಾಕ್ಷ್ಯಾಧಾರಗಳು ಮತ್ತು ಗ್ರಂಥಗಳೊಂದಿಗೆ (ನಾವು

بِٱلۡبَيِّنَٰتِ وَٱلزُّبُرِۗ وَأَنزَلۡنَآ إِلَيۡكَ ٱلذِّكۡرَ لِتُبَيِّنَ

[1] ವಿದ್ವಾಂಸರು ಎಂದರೆ ಯಹೂದಿಗಳು ಮತ್ತು ಕ್ರೈಸ್ತರಲ್ಲಿರುವ ವಿದ್ವಾಂಸರು. ಈ ಮಾತಿನ ಅರ್ಥವೇನೆಂದರೆ, ಅಲ್ಲಾಹು ಕಳುಹಿಸಿದ ಪ್ರವಾದಿಗಳೆಲ್ಲರೂ ಮನುಷ್ಯರಾಗಿದ್ದರು. ಆದ್ದರಿಂದ ಪ್ರವಾದಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮನುಷ್ಯರಾಗಿರುವುದರಲ್ಲಿ ಅಚ್ಚರಿಯೇನಿಲ್ಲ. ಅವರಿಗಿಂತ ಮೊದಲು ಬಂದ ಸಂದೇಶವಾಹಕರುಗಳು ಮನುಷ್ಯರಾಗಿದ್ದರೋ ಅಲ್ಲವೋ ಎಂದು ನಿಮಗೆ ಸಂಶಯವಿದ್ದರೆ ಯಹೂದಿ-ಕ್ರೈಸ್ತರಲ್ಲಿರುವ ವಿದ್ವಾಂಸರೊಡನೆ ಕೇಳಿ ನೋಡಿ.

ಅವರನ್ನು ಕಳುಹಿಸಿದ್ದೇವೆ). (ಪ್ರವಾದಿಯವರೇ) ನಾವು ಈ ಗ್ರಂಥವನ್ನು ನಿಮಗೆ ಅವತೀರ್ಣಗೊಳಿಸಿರುವುದು ಜನರಿಗೆ ಅವತೀರ್ಣವಾದ ಸಂದೇಶವನ್ನು ನೀವು ಅವರಿಗೆ ವಿವರಿಸಿಕೊಡುವುದಕ್ಕಾಗಿ ಮತ್ತು ಅವರು ಆಲೋಚಿಸುವುದಕ್ಕಾಗಿ.

لِلنَّاسِ مَا نُزِّلَ إِلَيۡهِمۡ وَلَعَلَّهُمۡ يَتَفَكَّرُونَ ٤٤

---

45. ಕೆಟ್ಟ ಪಿತೂರಿಗಳನ್ನು ಮಾಡುವವರು—ಅವರನ್ನು ಅಲ್ಲಾಹು ಭೂಮಿಯಲ್ಲಿ ಹುದುಗಿಸಿ ಬಿಡಲಾರನು ಅಥವಾ ಅವರು ನಿರೀಕ್ಷಿಸದ ಕಡೆಯಿಂದ ಅವರಿಗೆ ಶಿಕ್ಷೆಯು ಬಂದೆರಗಲಾರದು ಎಂದು ನಿರ್ಭಯರಾಗಿದ್ದಾರೆಯೇ?

أَفَأَمِنَ ٱلَّذِينَ مَكَرُواْ ٱلسَّيِّـَٔاتِ أَن يَخۡسِفَ ٱللَّهُ بِهِمُ ٱلۡأَرۡضَ أَوۡ يَأۡتِيَهُمُ ٱلۡعَذَابُ مِنۡ حَيۡثُ لَا يَشۡعُرُونَ ٤٥

---

46. ಅಥವಾ ಅವರು ತಮ್ಮ ಕೆಲಸ-ಕಾರ್ಯಗಳಲ್ಲಿ ನಿರತರಾಗಿರುವಾಗ ಅಲ್ಲಾಹು ಅವರನ್ನು ಹಿಡಿಯಲಾರನೆಂದು (ಅವರು ನಿರ್ಭಯರಾಗಿದ್ದಾರೆಯೇ)? ಏನೇ ಆದರೂ ಅಲ್ಲಾಹನನ್ನು ಸೋಲಿಸಲು ಅವರಿಗೆ ಸಾಧ್ಯವಿಲ್ಲ.

أَوۡ يَأۡخُذَهُمۡ فِي تَقَلُّبِهِمۡ فَمَا هُم بِمُعۡجِزِينَ ٤٦

---

47. ಅಥವಾ ಅವರನ್ನು ಹೆದರುವಂತೆ ಮಾಡಿ ಹಿಡಿಯಲಾರನೆಂದು (ಅವರು ನಿರ್ಭಯರಾಗಿದ್ದಾರೆಯೇ)? ಆದರೆ ನಿಮ್ಮ ಪರಿಪಾಲಕನು (ಅಲ್ಲಾಹು) ಅತ್ಯಂತ ಸಹಾನುಭೂತಿಯುಳ್ಳವನು ಮತ್ತು ಅತ್ಯಧಿಕ ದಯೆ ತೋರುವವನಾಗಿದ್ದಾನೆ.

أَوۡ يَأۡخُذَهُمۡ عَلَىٰ تَخَوُّفٖ فَإِنَّ رَبَّكُمۡ لَرَءُوفٞ رَّحِيمٌ ٤٧

---

48. ಅಲ್ಲಾಹು ಸೃಷ್ಟಿಸಿದ ಯಾವುದಾದರೂ ವಸ್ತುವನ್ನು ಅವರು ನೋಡುವುದಿಲ್ಲವೇ? ಅದರ ನೆರಳು ಬಲಭಾಗದಲ್ಲೂ ಎಡಭಾಗದಲ್ಲೂ ಅಲ್ಲಾಹನಿಗೆ ಸಾಷ್ಟಾಂಗ ಮಾಡುತ್ತದೆ ಮತ್ತು ತನ್ನ ವಿನಮ್ರತೆಯನ್ನು ವ್ಯಕ್ತಪಡಿಸುತ್ತದೆ.

أَوَلَمۡ يَرَوۡاْ إِلَىٰ مَا خَلَقَ ٱللَّهُ مِن شَيۡءٖ يَتَفَيَّؤُاْ ظِلَٰلُهُۥ عَنِ ٱلۡيَمِينِ وَٱلشَّمَآئِلِ سُجَّدٗا لِّلَّهِ وَهُمۡ دَٰخِرُونَ ٤٨

---

49. ಭೂಮ್ಯಾಕಾಶಗಳಲ್ಲಿರುವ ಎಲ್ಲಾ ಜೀವರಾಶಿಗಳು ಮತ್ತು ಎಲ್ಲಾ ದೇವದೂತರುಗಳು ಅಲ್ಲಾಹನಿಗೆ ಸಾಷ್ಟಾಂಗ ಮಾಡುತ್ತಾರೆ. ಅವರು ಅಹಂಕಾರ ತೋರುವುದಿಲ್ಲ.

وَلِلَّهِ يَسۡجُدُ مَا فِي ٱلسَّمَٰوَٰتِ وَمَا فِي ٱلۡأَرۡضِ مِن دَآبَّةٖ وَٱلۡمَلَٰٓئِكَةُ وَهُمۡ لَا يَسۡتَكۡبِرُونَ ٤٩

---

50. ಅವರು (ದೇವದೂತರು) ತಮ್ಮ ಮೇಲ್ಭಾಗದಲ್ಲಿರುವ ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಭಯಪಡುತ್ತಾರೆ. ಅವರಿಗೆ ಆದೇಶಿಸಲಾಗುವುದನ್ನು ನಿರ್ವಹಿಸುತ್ತಾರೆ.

يَخَافُونَ رَبَّهُم مِّن فَوۡقِهِمۡ وَيَفۡعَلُونَ مَا يُؤۡمَرُونَ ٥٠

---

51. ಅಲ್ಲಾಹು ಹೇಳಿದನು: “ನೀವು ಎರಡು ದೇವರುಗಳನ್ನು ಸ್ವೀಕರಿಸಬೇಡಿ. ಏಕೈಕ ದೇವನು ಅವನು (ಅಲ್ಲಾಹು) ಮಾತ್ರ. ಆದ್ದರಿಂದ ನೀವು ನನ್ನನ್ನು ಮಾತ್ರ ಭಯಪಡಿರಿ.”

وَقَالَ ٱللَّهُ لَا تَتَّخِذُوٓاْ إِلَٰهَيۡنِ ٱثۡنَيۡنِۖ إِنَّمَا هُوَ إِلَٰهٞ وَٰحِدٞ فَإِيَّٰيَ فَٱرۡهَبُونِ ٥١

---

52. ಭೂಮ್ಯಾಕಾಶಗಳಲ್ಲಿರುವ ಎಲ್ಲವೂ ಅವನಿಗೆ ಸೇರಿದ್ದು. ಆರಾಧನೆ ಅವನಿಗೆ ಮಾತ್ರ ಸಲ್ಲತಕ್ಕದ್ದು. ಆದರೂ ನೀವು ಅಲ್ಲಾಹನನ್ನು

وَلَهُۥ مَا فِي ٱلسَّمَٰوَٰتِ وَٱلۡأَرۡضِ وَلَهُ ٱلدِّينُ وَاصِبًاۚ أَفَغَيۡرَ ٱللَّهِ تَتَّقُونَ ٥٢

ಬಿಟ್ಟು ಬೇರೆ ದೇವರುಗಳನ್ನು ಭಯಪಡುತ್ತೀರಾ?

53. ನಿಮ್ಮಲ್ಲಿ ಬಳಿ ಯಾವುದೇ ಅನುಗ್ರಹಗಳಿದ್ದರೂ ಅದು ಅಲ್ಲಾಹು ನೀಡಿದ್ದಾಗಿದೆ. ನಂತರ ನಿಮಗೇನಾದರೂ ತೊಂದರೆ ಸಂಭವಿಸಿದರೆ ನೀವು ಅವನಲ್ಲೇ ಮೊರೆಯಿಡುತ್ತೀರಿ.

وَمَا بِكُم مِّن نِّعۡمَةٖ فَمِنَ ٱللَّهِۖ ثُمَّ إِذَا مَسَّكُمُ
ٱلضُّرُّ فَإِلَيۡهِ تَجۡـَٔرُونَ ٥٣

54. ನಂತರ ಅವನು ನಿಮ್ಮಿಂದ ಆ ತೊಂದರೆಯನ್ನು ನಿವಾರಿಸಿದರೆ, ಅಗೋ ನಿಮ್ಮಲ್ಲೊಂದು ಗುಂಪು ತಮ್ಮ ಪರಿಪಾಲಕನೊಡನೆ (ಅಲ್ಲಾಹನೊಡನೆ) ಸಹಭಾಗಿತ್ವ (ಶಿರ್ಕ್) ಮಾಡುತ್ತಾರೆ.

ثُمَّ إِذَا كَشَفَ ٱلضُّرَّ عَنكُمۡ إِذَا فَرِيقٞ مِّنكُم
بِرَبِّهِمۡ يُشۡرِكُونَ ٥٤

55. ನಾವು ಅವರಿಗೆ ದಯಪಾಲಿಸಿದ ಅನುಗ್ರಹಗಳನ್ನು ಅವರು ನಿಷೇಧಿಸುತ್ತಾರೆ. ನೀವು ಆನಂದಿಸಿ. ಸದ್ಯವೇ ನೀವು ತಿಳಿಯುವಿರಿ.

لِيَكۡفُرُواْ بِمَآ ءَاتَيۡنَٰهُمۡۚ فَتَمَتَّعُواْ فَسَوۡفَ
تَعۡلَمُونَ ٥٥

56. ನಾವು ಅವರಿಗೆ ಒದಗಿಸಿರುವುದರಲ್ಲಿ ಒಂದಂಶವನ್ನು ಅವರು ಅವರಿಗೆ ಯಾವುದೇ ಪರಿಚಯವಿಲ್ಲದ ದೇವರುಗಳಿಗೆ ಮೀಸಲಿಡುತ್ತಾರೆ.[1] ಅಲ್ಲಾಹನಾಣೆ! ನಿಮ್ಮ ಈ ಸುಳ್ಳಾರೋಪಗಳ ಬಗ್ಗೆ ನಿಮ್ಮೊಡನೆ ಖಂಡಿತ ಪ್ರಶ್ನಿಸಲಾಗುವುದು.

وَيَجۡعَلُونَ لِمَا لَا يَعۡلَمُونَ نَصِيبٗا مِّمَّا رَزَقۡنَٰهُمۡۗ
تَٱللَّهِ لَتُسۡـَٔلُنَّ عَمَّا كُنتُمۡ تَفۡتَرُونَ ٥٦

57. ಅವರು ಅಲ್ಲಾಹನಿಗೆ ಹೆಣ್ಣು ಮಕ್ಕಳಿದ್ದಾರೆಂದು ಆರೋಪಿಸುತ್ತಾರೆ. ಅಲ್ಲಾಹು ಪರಿಶುದ್ಧನು! ಆದರೆ ಅವರಿಗೆ ಅವರು ಬಯಸುವುದನ್ನೇ (ಗಂಡು ಮಕ್ಕಳನ್ನು) ಇಟ್ಟುಕೊಂಡಿದ್ದಾರೆ.

وَيَجۡعَلُونَ لِلَّهِ ٱلۡبَنَٰتِ سُبۡحَٰنَهُۥ وَلَهُم مَّا
يَشۡتَهُونَ ٥٧

58. ಅವರಲ್ಲೊಬ್ಬನಿಗೆ ಒಂದು ಹೆಣ್ಣು ಮಗುವಿನ ಜನನದ ಬಗ್ಗೆ ಶುಭ ಸುದ್ದಿಯನ್ನು ತಿಳಿಸಲಾದರೆ, ಅವನ ಮುಖವು ಕಪ್ಪಿಡುತ್ತದೆ ಮತ್ತು (ಹೃದಯದಲ್ಲಿ) ರೋಷ ಉಕ್ಕುತ್ತದೆ.

وَإِذَا بُشِّرَ أَحَدُهُم بِٱلۡأُنثَىٰ ظَلَّ وَجۡهُهُۥ مُسۡوَدّٗا
وَهُوَ كَظِيمٞ ٥٨

59. ಆ ಕೆಟ್ಟ ವಾರ್ತೆಯ ಕಾರಣದಿಂದಾಗಿ ಅವನು ಜನರಿಂದ ಅಡಗುತ್ತಾನೆ. ಆ ಮಗುವನ್ನು ಸಾಕಬೇಕೋ ಅಥವಾ ಮಣ್ಣಿನಲ್ಲಿ ದಫನ ಮಾಡಬೇಕೋ? ಎಂದು ಅವನು ಯೋಚಿಸುತ್ತಾನೆ. ಅವರು ಮಾಡುವ ತೀರ್ಮಾನವು ಬಹಳ ನಿಕೃಷ್ಟವಾಗಿದೆ.[2]

يَتَوَٰرَىٰ مِنَ ٱلۡقَوۡمِ مِن سُوٓءِ مَا بُشِّرَ بِهِۦٓۚ
أَيُمۡسِكُهُۥ عَلَىٰ هُونٍ أَمۡ يَدُسُّهُۥ فِي ٱلتُّرَابِۗ أَلَا
سَآءَ مَا يَحۡكُمُونَ ٥٩

60. ಪರಲೋಕದಲ್ಲಿ ವಿಶ್ವಾಸವಿಡದವರಿಗೆ ಕೆಟ್ಟ ವಿಶೇಷಣವಿದೆ.

لِلَّذِينَ لَا يُؤۡمِنُونَ بِٱلۡأٓخِرَةِ مَثَلُ ٱلسَّوۡءِۖ وَلِلَّهِ

[1] ಅವರು ದೇವರುಗಳೆಂದು ಆರಾಧಿಸುತ್ತಿರುವುದು ಒಂದೋ ವಿಗ್ರಹಗಳು, ಅಥವಾ ಜಿನ್ನ್‌ಗಳು ಅಥವಾ ಪಿಶಾಚಿಗಳನ್ನಾಗಿದೆ. ಅವರ ನಿಜಸ್ಥಿತಿಯೇನೆಂದು ಆರಾಧಿಸುವವರಿಗೆ ತಿಳಿದಿಲ್ಲ. ಅದೇ ರೀತಿ ಸಮಾಧಿಯಲ್ಲಿರುವ ಮಹಾಪುರುಷರನ್ನು ಆರಾಧಿಸುವವರು ಕೂಡ. ಅವರು ನಿಜವಾಗಿಯೂ ದೇವರುಗಳೇ? ಅವರು ಪ್ರಾರ್ಥಿಸಲು ಅರ್ಹರೇ? ಪ್ರಾರ್ಥಿಸಿದರೆ ಅವರು ಉತ್ತರ ನೀಡುತ್ತಾರೆಯೇ? ಮುಂತಾದ ಯಾವುದೂ ಆರಾಧಿಸುವವರಿಗೆ ಸ್ಪಷ್ಟವಾಗಿ ತಿಳಿದಿಲ್ಲ. ಯಾವುದೇ ಸ್ಪಷ್ಟ ಆಧಾರವಿಲ್ಲದಿದ್ದರೂ ಅವರು ಅಲ್ಲಾಹನನ್ನು ಬಿಟ್ಟು ಆ ದೇವರುಗಳನ್ನು ಆರಾಧಿಸುತ್ತಾರೆ. ಅಲ್ಲಾಹು ಒದಗಿಸಿದ ಧನವನ್ನು ಆ ದೇವರುಗಳಿಗೆ ಕಾಣಿಕೆ ಹಾಕುತ್ತಾರೆ ಮತ್ತು ಅವರ ಮೇಲೆ ಹರಕೆ ಹೊರುತ್ತಾರೆ.

[2] ಮಕ್ಕಾದ ಬಹುದೇವಾರಾಧಕರಿಗೆ ಒಂದು ಹೆಣ್ಣು ಮಗು ಹುಟ್ಟಿದರೆ ಅವರು ಅದನ್ನು ಅನಿಷ್ಟವೆಂದು ಪರಿಗಣಿಸಿ ಜೀವಂತ ಹೂಳುತ್ತಾರೆ. ಹೆಣ್ಣು ಮಗು ಎಂಬ ಕಳಂಕವನ್ನು ಜೀವನವಿಡೀ ಹೊತ್ತುಕೊಂಡು ಆ ಮಗುವನ್ನು ಸಾಕಲು ಅವರು ಸಿದ್ಧರಿಲ್ಲ. ಆದರೆ ಅದೇ ಬಹುದೇವಾ-ರಾಧಕರು ದೇವದೂತರುಗಳನ್ನು ಅಲ್ಲಾಹನ ಹೆಣ್ಣು ಮಕ್ಕಳೆಂದು ಆರೋಪಿಸುತ್ತಾರೆ. ಆಗ ಅವರಿಗೆ ಅದು ಕಳಂಕವೆಂದು ತೋರುವುದಿಲ್ಲ.

ಅಲ್ಲಾಹನಿಗೆ ಅತ್ಯುನ್ನತ ವಿಶೇಷಣವಿದೆ. ಅವನು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

ٱلْمَثَلُ ٱلْأَعْلَىٰ ۚ وَهُوَ ٱلْعَزِيزُ ٱلْحَكِيمُ ﴿٦٠﴾

---

61. ಅಲ್ಲಾಹು ಮನುಷ್ಯರನ್ನು ಅವರು ಮಾಡಿದ ಅಕ್ರಮಗಳ ಕಾರಣದಿಂದ ಹಿಡಿದು ಶಿಕ್ಷಿಸುವುದಾದರೆ, ಭೂಮಿಯಲ್ಲಿ ಒಂದೇ ಒಂದು ಜೀವಿಯೂ ಉಳಿಯುತ್ತಿರಲಿಲ್ಲ. ಆದರೆ ಅವನು ಒಂದು ನಿಗದಿತ ಅವಧಿಯವರೆಗೆ ಅವರಿಗೆ ಕಾಲಾವಕಾಶ ನೀಡುತ್ತಾನೆ. ಅವರ ಅವಧಿಯೇನಾದರೂ ಬಂದುಬಿಟ್ಟರೆ ಆ ಅವಧಿಯಿಂದ ಒಂದು ಕ್ಷಣ ಹಿಂದೆ ಉಳಿಯಲು ಅಥವಾ ಒಂದು ಕ್ಷಣ ಮುಂದಕ್ಕೆ ಹೋಗಲು ಅವರಿಗೆ ಸಾಧ್ಯವಿಲ್ಲ.

وَلَوْ يُؤَاخِذُ ٱللَّهُ ٱلنَّاسَ بِظُلْمِهِم مَّا تَرَكَ عَلَيْهَا مِن دَآبَّةٍ وَلَٰكِن يُؤَخِّرُهُمْ إِلَىٰٓ أَجَلٍ مُّسَمًّى ۖ فَإِذَا جَآءَ أَجَلُهُمْ لَا يَسْتَـْٔخِرُونَ سَاعَةً وَلَا يَسْتَقْدِمُونَ ﴿٦١﴾

---

62. ಅವರಿಗೆ ಇಷ್ಟವಿಲ್ಲದ ವಸ್ತುಗಳನ್ನು ಅವರು ಅಲ್ಲಾಹನಿಗೆ ಆರೋಪಿಸುತ್ತಾರೆ. ಅತ್ಯುತ್ತಮವಾದುದೆಲ್ಲವೂ ಅವರಿಗೆಂದು ಅವರ ನಾಲಗೆಗಳು ಸುಳ್ಳು ಸುಳ್ಳಾಗಿ ಬಣ್ಣಿಸುತ್ತವೆ. ಸಂಶಯವೇ ಇಲ್ಲ! ನಿಶ್ಚಯವಾಗಿಯೂ ನರಕಾಗ್ನಿಯಿರುವುದು ಅವರಿಗೇ ಆಗಿದೆ. ಅವರು (ನರಕವಾಸಿಗಳ) ಮುಂಭಾಗದಲ್ಲಿರುವರು.

وَيَجْعَلُونَ لِلَّهِ مَا يَكْرَهُونَ ۚ وَتَصِفُ أَلْسِنَتُهُمُ ٱلْكَذِبَ أَنَّ لَهُمُ ٱلْحُسْنَىٰ ۖ لَا جَرَمَ أَنَّ لَهُمُ ٱلنَّارَ وَأَنَّهُم مُّفْرَطُونَ ﴿٦٢﴾

---

63. ಅಲ್ಲಾಹನಾಣೆ! ನಿಮಗಿಂತ ಮೊದಲು ನಾವು ಅನೇಕ ಸಮುದಾಯಗಳಿಗೆ ಸಂದೇಶವಾಹಕರನ್ನು ಕಳುಹಿಸಿದ್ದೇವೆ. ಆದರೆ ಶೈತಾನನು ಅವರಿಗೆ ಅವರ ದುಷ್ಕರ್ಮಗಳನ್ನು ಅಂದಗೊಳಿಸಿ ತೋರಿಸಿದನು. ಇಂದು ಕೂಡ ಅವನು ಅವರ ಮಿತ್ರನೇ ಆಗಿದ್ದಾನೆ. ಅವರಿಗೆ ಯಾತನಾಮಯ ಶಿಕ್ಷೆಯಿದೆ.

تَٱللَّهِ لَقَدْ أَرْسَلْنَآ إِلَىٰٓ أُمَمٍ مِّن قَبْلِكَ فَزَيَّنَ لَهُمُ ٱلشَّيْطَٰنُ أَعْمَٰلَهُمْ فَهُوَ وَلِيُّهُمُ ٱلْيَوْمَ وَلَهُمْ عَذَابٌ أَلِيمٌ ﴿٦٣﴾

---

64. (ಪ್ರವಾದಿಯವರೇ) ಯಾವ ವಿಷಯದಲ್ಲಿ ಅವರು ಭಿನ್ನಮತ ತಳೆದರೋ ಅದನ್ನು ಅವರಿಗೆ ಸ್ಪಷ್ಟವಾಗಿ ವಿವರಿಸಿಕೊಡಲು ನಾವು ನಿಮಗೆ ಈ ಗ್ರಂಥವನ್ನು ಅವತೀರ್ಣಗೊಳಿಸಿದ್ದೇವೆ. ಇದು ವಿಶ್ವಾಸವಿಡುವ ಜನರಿಗೆ ಸನ್ಮಾರ್ಗ ಮತ್ತು ದಯೆಯಾಗಿದೆ.

وَمَآ أَنزَلْنَا عَلَيْكَ ٱلْكِتَٰبَ إِلَّا لِتُبَيِّنَ لَهُمُ ٱلَّذِى ٱخْتَلَفُوا۟ فِيهِ ۙ وَهُدًى وَرَحْمَةً لِّقَوْمٍ يُؤْمِنُونَ ﴿٦٤﴾

---

65. ಅಲ್ಲಾಹು ಆಕಾಶದಿಂದ ಮಳೆಯನ್ನು ಸುರಿಸಿದನು. ನಂತರ ಅದರಿಂದ ನಿರ್ಜೀವವಾಗಿದ್ದ ಭೂಮಿಗೆ ಜೀವವನ್ನು ನೀಡಿದನು. ನಿಶ್ಚಯವಾಗಿಯೂ ಕಿವಿಗೊಡುವ ಜನರಿಗೆ ಅದರಲ್ಲಿ ದೃಷ್ಟಾಂತವಿದೆ.

وَٱللَّهُ أَنزَلَ مِنَ ٱلسَّمَآءِ مَآءً فَأَحْيَا بِهِ ٱلْأَرْضَ بَعْدَ مَوْتِهَآ ۚ إِنَّ فِى ذَٰلِكَ لَءَايَةً لِّقَوْمٍ يَسْمَعُونَ ﴿٦٥﴾

---

66. ನಿಶ್ಚಯವಾಗಿಯೂ ನಿಮಗೆ ಜಾನುವಾರುಗಳಲ್ಲಿ ನೀತಿಪಾಠವಿದೆ. ಅವುಗಳ ಉದರಗಳಲ್ಲಿ ಏನಿದೆಯೋ ಅದರಿಂದ—ಸೆಗಣಿ ಮತ್ತು ರಕ್ತದ ನಡುವಿನಿಂದ—ನಾವು ನಿಮಗೆ ಶುದ್ಧ ಹಾಲನ್ನು ಕುಡಿಯಲು ನೀಡುತ್ತೇವೆ. ಅದು ಕುಡಿಯುವವರಿಗಂತೂ

وَإِنَّ لَكُمْ فِى ٱلْأَنْعَٰمِ لَعِبْرَةً ۖ نُّسْقِيكُم مِّمَّا فِى بُطُونِهِۦ مِنۢ بَيْنِ فَرْثٍ وَدَمٍ لَّبَنًا خَالِصًا سَآئِغًا لِّلشَّٰرِبِينَ ﴿٦٦﴾

ಬಹಳ ರುಚಿಕರವಾಗಿದೆ.

67. ಖರ್ಜೂರದ ಮರಗಳ ಮತ್ತು ದ್ರಾಕ್ಷಿ ಬಳ್ಳಿಗಳ ಹಣ್ಣುಗಳಿಂದಲೂ ನೀವು ಶರಾಬನ್ನು ಮತ್ತು ಉತ್ತಮ ಆಹಾರಗಳನ್ನು ತಯಾರಿಸುತ್ತೀರಿ.[1] ನಿಶ್ಚಯವಾಗಿಯೂ ಅರ್ಥಮಾಡಿಕೊಳ್ಳುವ ಜನರಿಗೆ ಅದರಲ್ಲಿ ದೃಷ್ಟಾಂತವಿದೆ.

وَمِن ثَمَرَٰتِ ٱلنَّخِيلِ وَٱلۡأَعۡنَٰبِ تَتَّخِذُونَ مِنۡهُ سَكَرٗا وَرِزۡقًا حَسَنًاۚ إِنَّ فِي ذَٰلِكَ لَأٓيَةٗ لِّقَوۡمٖ يَعۡقِلُونَ ٦٧

68. ನಿಮ್ಮ ಪರಿಪಾಲಕನು (ಅಲ್ಲಾಹು) ಜೇನುನೊಣಕ್ಕೆ ಸಂದೇಶವನ್ನು ನೀಡಿದನು: "ಬೆಟ್ಟಗಳಲ್ಲಿ, ಮರಗಳಲ್ಲಿ ಮತ್ತು ಮನುಷ್ಯರು ನಿರ್ಮಿಸಿದ ಎತ್ತರದ ಕಟ್ಟಡಗಳಲ್ಲಿ ಗೂಡುಗಳನ್ನು ನಿರ್ಮಿಸು.

وَأَوۡحَىٰ رَبُّكَ إِلَى ٱلنَّحۡلِ أَنِ ٱتَّخِذِي مِنَ ٱلۡجِبَالِ بُيُوتٗا وَمِنَ ٱلشَّجَرِ وَمِمَّا يَعۡرِشُونَ ٦٨

69. ನಂತರ ಎಲ್ಲ ರೀತಿಯ ಹಣ್ಣುಗಳನ್ನು ತಿಂದು, ನಿನ್ನ ಪರಿಪಾಲಕನು (ಅಲ್ಲಾಹು) ಸುಲಭಗೊಳಿಸಿದ ಮಾರ್ಗಗಳಲ್ಲಿ ಸಂಚರಿಸು." ಅವುಗಳ ಉದರಗಳಿಂದ ವಿಭಿನ್ನ ರಂಗುಗಳ ಪಾನೀಯವು ಹೊರಬರುತ್ತದೆ. ಅದರಲ್ಲಿ ಮನುಷ್ಯರಿಗೆ ಉಪಶಮನವಿದೆ. ನಿಶ್ಚಯವಾಗಿಯೂ ಯೋಚಿಸುವ ಜನರಿಗೆ ಅದರಲ್ಲಿ ದೃಷ್ಟಾಂತವಿದೆ.

ثُمَّ كُلِي مِن كُلِّ ٱلثَّمَرَٰتِ فَٱسۡلُكِي سُبُلَ رَبِّكِ ذُلُلٗاۚ يَخۡرُجُ مِنۢ بُطُونِهَا شَرَابٞ مُّخۡتَلِفٌ أَلۡوَٰنُهُۥ فِيهِ شِفَآءٞ لِّلنَّاسِۚ إِنَّ فِي ذَٰلِكَ لَأٓيَةٗ لِّقَوۡمٖ يَتَفَكَّرُونَ ٦٩

70. ಅಲ್ಲಾಹು ನಿಮ್ಮನ್ನು ಸೃಷ್ಟಿಸಿದನು. ನಂತರ ನಿಮ್ಮನ್ನು ಅವನು ಮೃತಪಡಿಸುವನು. ನಿಮ್ಮಲ್ಲಿ ಕೆಲವರನ್ನು—ಅವರು ಅನೇಕ ವಿಷಯಗಳನ್ನು ತಿಳಿದುಕೊಂಡ ಬಳಿಕವೂ ಏನೂ ತಿಳಿಯದ ಅವಸ್ಥೆಗೆ ತಲುಪುವ ರೀತಿಯಲ್ಲಿ ಹಣ್ಣು ಹಣ್ಣು ಮುದುಕರಾಗುವ ಪ್ರಾಯಕ್ಕೆ ಮರಳಿಸಲಾಗುವರು. ನಿಶ್ಚಯವಾಗಿಯೂ ಅಲ್ಲಾಹು ಸರ್ವಜ್ಞನು ಮತ್ತು ಸರ್ವಶಕ್ತನಾಗಿದ್ದಾನೆ.

وَٱللَّهُ خَلَقَكُمۡ ثُمَّ يَتَوَفَّىٰكُمۡۚ وَمِنكُم مَّن يُرَدُّ إِلَىٰٓ أَرۡذَلِ ٱلۡعُمُرِ لِكَيۡ لَا يَعۡلَمَ بَعۡدَ عِلۡمٖ شَيۡـًٔاۚ إِنَّ ٱللَّهَ عَلِيمٞ قَدِيرٞ ٧٠

71. ಅಲ್ಲಾಹು ನಿಮ್ಮಲ್ಲಿ ಕೆಲವರಿಗೆ ಇತರ ಕೆಲವರಿಗಿಂತಲೂ ಹೆಚ್ಚು ಉಪಜೀವನವನ್ನು ನೀಡಿದ್ದಾನೆ. ಹೆಚ್ಚು ಉಪಜೀವನ ನೀಡಲಾದವರು ಅದನ್ನು ತಮ್ಮ ಅಧೀನದಲ್ಲಿರುವ ಗುಲಾಮರಿಗೆ ನೀಡಿ ಅದರಲ್ಲಿ ಇಬ್ಬರೂ (ಗುಲಾಮ ಮತ್ತು ಯಜಮಾನ) ಸಮಾನರಾಗುವಂತೆ ಮಾಡಿಕೊಳ್ಳುವುದಿಲ್ಲ.[2] ಹಾಗಿದ್ದೂ ಅವರು ಅಲ್ಲಾಹನ ಅನುಗ್ರಹಗಳನ್ನು ನಿಷೇಧಿಸುತ್ತಾರೆಯೇ?

وَٱللَّهُ فَضَّلَ بَعۡضَكُمۡ عَلَىٰ بَعۡضٖ فِي ٱلرِّزۡقِۚ فَمَا ٱلَّذِينَ فُضِّلُواْ بِرَآدِّي رِزۡقِهِمۡ عَلَىٰ مَا مَلَكَتۡ أَيۡمَٰنُهُمۡ فَهُمۡ فِيهِ سَوَآءٌۚ أَفَبِنِعۡمَةِ ٱللَّهِ يَجۡحَدُونَ ٧١

72. ಅಲ್ಲಾಹು ನಿಮ್ಮಿಂದಲೇ ನಿಮಗೆ ಪತ್ನಿಯರನ್ನು ಮಾಡಿಕೊಟ್ಟನು.

وَٱللَّهُ جَعَلَ لَكُم مِّنۡ أَنفُسِكُمۡ أَزۡوَٰجٗا

[1] ಈ ವಚನವು ಅವತೀರ್ಣವಾಗುವಾಗ ಶರಾಬನ್ನು ನಿಷೇಧಿಸಲಾಗಿರಲಿಲ್ಲ. ಆದರೂ ಈ ವಚನದಲ್ಲಿ ಶರಾಬು ಎಂದು ಹೇಳಿದ ಬಳಿಕ ಉತ್ತಮ ಆಹಾರ ಎಂಬ ಉಲ್ಲೇಖವಿದೆ. ಶರಾಬು ಉತ್ತಮ ಆಹಾರವಲ್ಲ ಎಂದು ಇದರಿಂದ ತಿಳಿಯಬಹುದು.

[2] ನಿಮ್ಮ ಅಧೀನದಲ್ಲಿರುವ ಗುಲಾಮರಿಗಿಂತಲೂ ಹೆಚ್ಚು ಆಸ್ತಿಪಾಸ್ತಿ ನಿಮ್ಮಲ್ಲಿದೆ. ಆದರೂ ನೀವು ನಿಮ್ಮಲ್ಲಿರುವ ಆಸ್ತಿಯನ್ನು ಅವರಿಗೂ ಹಂಚಿ ನೀವಿಬ್ಬರೂ ಆಸ್ತಿಯಲ್ಲಿ ಸಮಾನರಾಗುವಂತೆ ಮಾಡುವುದಿಲ್ಲ. ಆದರೆ ನೀವು ಅಲ್ಲಾಹನ ದಾಸರನ್ನು ಅವನಿಗೆ ಸಹಭಾಗಿಯಾಗಿ ಮಾಡಿ ಅವರು ಅಲ್ಲಾಹನಿಗೆ ಸಮಾನರಾಗಿದ್ದಾರೆ ಮತ್ತು ಅಲ್ಲಾಹು ಅವರಿಗೆ ಅವನ ಅಧಿಕಾರವನ್ನು ಹಂಚಿದ್ದಾನೆಂದು ಹೇಳುತ್ತೀರಿ.

ನಿಮ್ಮ ಪತ್ನಿಯರ ಮೂಲಕ ನಿಮಗೆ ಮಕ್ಕಳು ಮೊಮ್ಮಕ್ಕಳನ್ನು ಮಾಡಿಕೊಟ್ಟನು. ಉತ್ತಮ ವಸ್ತುಗಳನ್ನು ನಿಮಗೆ ಆಹಾರವಾಗಿ ನೀಡಿದನು. ಹೀಗಿದ್ದೂ ಅವರು ಅಸತ್ಯದಲ್ಲಿ ನಂಬಿಕೆಯಿಟ್ಟು ಅಲ್ಲಾಹನ ಸವಲತ್ತುಗಳನ್ನು ನಿಷೇಧಿಸುತ್ತಾರೆಯೇ?

وَجَعَلَ لَكُم مِّنْ أَزْوَٰجِكُم بَنِينَ وَحَفَدَةً
وَرَزَقَكُم مِّنَ ٱلطَّيِّبَٰتِ ۚ أَفَبِٱلْبَٰطِلِ يُؤْمِنُونَ
وَبِنِعْمَتِ ٱللَّهِ هُمْ يَكْفُرُونَ ﴿٧٢﴾

---

73. ಅವರು ಅಲ್ಲಾಹನನ್ನು ಬಿಟ್ಟು ಭೂಮ್ಯಾಕಾಶಗಳಲ್ಲಿ ಅವರಿಗೆ ಯಾವುದೇ ಉಪಜೀವನ ಮಾರ್ಗಗಳನ್ನು ಮಾಡಿಕೊಡದವರನ್ನು ಮತ್ತು ಯಾವುದೇ ಸಾಮರ್ಥ್ಯವಿಲ್ಲದವರನ್ನು ಆರಾಧಿಸುತ್ತಿದ್ದಾರೆ.

وَيَعْبُدُونَ مِن دُونِ ٱللَّهِ مَا لَا يَمْلِكُ لَهُمْ
رِزْقًا مِّنَ ٱلسَّمَٰوَٰتِ وَٱلْأَرْضِ شَيْـًٔا وَلَا
يَسْتَطِيعُونَ ﴿٧٣﴾

---

74. ಆದ್ದರಿಂದ ನೀವು ಅಲ್ಲಾಹನಿಗೆ ಉದಾಹರಣೆಗಳನ್ನು ಕೊಡಲು ಹೋಗಬೇಡಿ. ನಿಶ್ಚಯವಾಗಿಯೂ ಅಲ್ಲಾಹನಿಗೆ ತಿಳಿದಿದೆ. ಆದರೆ ನಿಮಗೆ ತಿಳಿದಿಲ್ಲ.

فَلَا تَضْرِبُوا۟ لِلَّهِ ٱلْأَمْثَالَ ۚ إِنَّ ٱللَّهَ يَعْلَمُ وَأَنتُمْ
لَا تَعْلَمُونَ ﴿٧٤﴾

---

75. ಅಲ್ಲಾಹು ಒಂದು ಉದಾಹರಣೆಯನ್ನು ಕೊಡುತ್ತಾನೆ. ಇನ್ನೊಬ್ಬನ ಅಧೀನದಲ್ಲಿರುವ ಒಬ್ಬ ಗುಲಾಮ. ಅವನಿಗೆ (ಸ್ವಯಂ) ಏನೂ ಮಾಡುವ ಸಾಮರ್ಥ್ಯವಿಲ್ಲ. ಅದೇ ರೀತಿ, ನಾವು ಅತ್ಯುತ್ತಮ ಉಪಜೀವನವನ್ನು ದಯಪಾಲಿಸಿದ ಇನ್ನೊಬ್ಬ ವ್ಯಕ್ತಿ. ಅವನು ಅದರಿಂದ ರಹಸ್ಯವಾಗಿಯೂ ಬಹಿರಂಗವಾಗಿಯೂ ಖರ್ಚು ಮಾಡುತ್ತಾನೆ. ಇವರು ಸಮಾನರಾಗುವರೇ?[1] ಅಲ್ಲಾಹನಿಗೆ ಸರ್ವಸ್ತುತಿ. ವಾಸ್ತವವಾಗಿ, ಅವರಲ್ಲಿ ಹೆಚ್ಚಿನವರೂ ತಿಳಿಯುವುದಿಲ್ಲ.

ضَرَبَ ٱللَّهُ مَثَلًا عَبْدًا مَّمْلُوكًا لَّا يَقْدِرُ عَلَىٰ
شَىْءٍ وَمَن رَّزَقْنَٰهُ مِنَّا رِزْقًا حَسَنًا فَهُوَ يُنفِقُ
مِنْهُ سِرًّا وَجَهْرًا ۖ هَلْ يَسْتَوُۥنَ ۚ ٱلْحَمْدُ لِلَّهِ ۚ بَلْ
أَكْثَرُهُمْ لَا يَعْلَمُونَ ﴿٧٥﴾

---

76. ಅಲ್ಲಾಹು ಇನ್ನೊಂದು ಉದಾಹರಣೆಯನ್ನು ಕೊಡುತ್ತಾನೆ. ಇಬ್ಬರು ವ್ಯಕ್ತಿಗಳಿದ್ದು ಅವರಲ್ಲೊಬ್ಬನು ಮೂಕ. ಅವನಿಗೆ ಏನೂ ಮಾಡುವ ಸಾಮರ್ಥ್ಯವಿಲ್ಲ. ಅವನ ಯಜಮಾನನಿಗೆ ಅವನೊಂದು ಹೊರೆಯಾಗಿದ್ದಾನೆ. ಅವನನ್ನು ಎಲ್ಲಿಗೆ ಕಳುಹಿಸಿದರೂ ಅವನು ಯಾವುದೇ ಒಳಿತನ್ನು ತರುವುದಿಲ್ಲ. ಇವನು ಮತ್ತು ನೇರಮಾರ್ಗ-ದಲ್ಲಿದ್ದು ನ್ಯಾಯವನ್ನು ಆದೇಶಿಸುವ ವ್ಯಕ್ತಿ ಸಮಾನರಾಗುವರೇ?

وَضَرَبَ ٱللَّهُ مَثَلًا رَّجُلَيْنِ أَحَدُهُمَآ أَبْكَمُ
لَا يَقْدِرُ عَلَىٰ شَىْءٍ وَهُوَ كَلٌّ عَلَىٰ مَوْلَىٰهُ أَيْنَمَا
يُوَجِّههُّ لَا يَأْتِ بِخَيْرٍ ۖ هَلْ يَسْتَوِى هُوَ وَمَن
يَأْمُرُ بِٱلْعَدْلِ ۙ وَهُوَ عَلَىٰ صِرَٰطٍ مُّسْتَقِيمٍ ﴿٧٦﴾

---

77. ಭೂಮ್ಯಾಕಾಶಗಳ ಅದೃಶ್ಯಗಳೆಲ್ಲವೂ ಅಲ್ಲಾಹನಿಗೆ ಸೇರಿದ್ದು. ಅಂತ್ಯ ಸಮಯದ ಆಜ್ಞೆಯು ಕಣ್ಣೆವೆಯಿಕ್ಕುವಂತೆ ಅಥವಾ ಅದಕ್ಕಿಂತಲೂ ಹತ್ತಿರವಾಗಿದೆ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

وَلِلَّهِ غَيْبُ ٱلسَّمَٰوَٰتِ وَٱلْأَرْضِ ۚ وَمَآ أَمْرُ
ٱلسَّاعَةِ إِلَّا كَلَمْحِ ٱلْبَصَرِ أَوْ هُوَ أَقْرَبُ ۚ إِنَّ ٱللَّهَ
عَلَىٰ كُلِّ شَىْءٍ قَدِيرٌ ﴿٧٧﴾

---

[1] ಮೊದಲನೆಯವನು ಒಬ್ಬ ಗುಲಾಮ ಮತ್ತು ಎರಡನೆಯವನು ಸ್ವತಂತ್ರ ವ್ಯಕ್ತಿ. ಇವರಿಬ್ಬರೂ ಮನುಷ್ಯರು. ಇವರು ಅನೇಕ ಗುಣಗಳನ್ನು ಸಮಾನವಾಗಿ ಹಂಚಿಕೊಳ್ಳುತ್ತಾರೆ. ಆದರೂ ನೀವು ಇವರಿಬ್ಬರನ್ನು ಸಮಾನರೆಂದು ಪರಿಗಣಿಸುವುದಿಲ್ಲ. ಹೀಗಿರುವಾಗ ನಿಮ್ಮ ದೇವರುಗಳನ್ನು ಅಥವಾ ಸಮಾಧಿಯಲ್ಲಿರುವ ಮಹಾಪುರುಷರನ್ನು ನೀವು ಅಲ್ಲಾಹನಿಗೆ ಸಮಾನರೆಂದು ಹೇಗೆ ಕಲ್ಪಿಸಿಕೊಳ್ಳುತ್ತೀರಿ?

78. ಅಲ್ಲಾಹು ನಿಮ್ಮನ್ನು ನಿಮ್ಮ ತಾಯಂದಿರ ಉದರಗಳಿಂದ ಹೊರತಂದನು. ಆಗ ನಿಮಗೆ ಏನೂ ತಿಳಿದಿರಲಿಲ್ಲ. ಅವನು ನಿಮಗೆ ಕಿವಿ, ಕಣ್ಣು ಮತ್ತು ಹೃದಯಗಳನ್ನು ನೀಡಿದನು. ನೀವು ಕೃತಜ್ಞರಾಗುವುದಕ್ಕಾಗಿ.

وَٱللَّهُ أَخۡرَجَكُم مِّنۢ بُطُونِ أُمَّهَٰتِكُمۡ لَا
تَعۡلَمُونَ شَيۡـٔٗا وَجَعَلَ لَكُمُ ٱلسَّمۡعَ وَٱلۡأَبۡصَٰرَ
وَٱلۡأَفۡـِٔدَةَ لَعَلَّكُمۡ تَشۡكُرُونَ ٧٨

79. ವಾಯುಮಂಡಲದಲ್ಲಿ ಅಲ್ಲಾಹನ ಆಜ್ಞೆಗೆ ವಿಧೇಯವಾಗಿ ಹಾರಾಡುವ ಹಕ್ಕಿಗಳನ್ನು ಅವರು ನೋಡಿಲ್ಲವೇ? ಅಲ್ಲಾಹನ ಹೊರತು ಯಾರೂ ಅವುಗಳನ್ನು ಆಧರಿಸಿ ಹಿಡಿಯುವುದಿಲ್ಲ. ನಿಶ್ಚಯವಾಗಿಯೂ ವಿಶ್ವಾಸವಿಡುವ ಜನರಿಗೆ ಇದರಲ್ಲಿ ದೃಷ್ಟಾಂತಗಳಿವೆ.

أَلَمۡ يَرَوۡاْ إِلَى ٱلطَّيۡرِ مُسَخَّرَٰتٖ فِي جَوِّ ٱلسَّمَآءِ
مَا يُمۡسِكُهُنَّ إِلَّا ٱللَّهُۚ إِنَّ فِي ذَٰلِكَ لَأٓيَٰتٖ
لِّقَوۡمٖ يُؤۡمِنُونَ ٧٩

80. ಅಲ್ಲಾಹು ನಿಮಗೆ ನಿಮ್ಮ ಮನೆಗಳಲ್ಲಿ ವಿಶ್ರಾಂತಿಯ ಸ್ಥಳವನ್ನು ಮಾಡಿಕೊಟ್ಟಿದ್ದಾನೆ. ಜಾನುವಾರುಗಳ ತೊಗಲುಗಳಿಂದಲೂ ಅವನು ನಿಮಗೆ ಮನೆಗಳನ್ನು (ಡೇರೆಗಳನ್ನು) ಮಾಡಿಕೊಟ್ಟಿದ್ದಾನೆ. ನೀವು ಪ್ರಯಾಣ ಮಾಡುವ ದಿನಗಳಲ್ಲೂ ಮತ್ತು ಬಿಡಾರ ಹೂಡುವ ದಿನಗಳಲ್ಲೂ ಅವುಗಳನ್ನು ಅನಾಯಾಸವಾಗಿ ಒಯ್ಯುತ್ತೀರಿ. ಅವುಗಳ ಉಣ್ಣೆ, ತುಪ್ಪಳ ಮತ್ತು ಕೇಶಗಳಿಂದ ನೀವು ನಿಗದಿತ ಕಾಲದವರೆಗೆ ಉಪಯೋಗಗಳನ್ನು ಮತ್ತು ಆನಂದವನ್ನು ಪಡೆಯುತ್ತೀರಿ.

وَٱللَّهُ جَعَلَ لَكُم مِّنۢ بُيُوتِكُمۡ سَكَنٗا وَجَعَلَ
لَكُم مِّن جُلُودِ ٱلۡأَنۡعَٰمِ بُيُوتٗا تَسۡتَخِفُّونَهَا
يَوۡمَ ظَعۡنِكُمۡ وَيَوۡمَ إِقَامَتِكُمۡ وَمِنۡ أَصۡوَافِهَا
وَأَوۡبَارِهَا وَأَشۡعَارِهَآ أَثَٰثٗا وَمَتَٰعًا إِلَىٰ حِينٖ ٨٠

81. ಅಲ್ಲಾಹು ನಿಮಗೆ ಅವನು ಸೃಷ್ಟಿಸಿದ ವಸ್ತುಗಳಿಂದ ನೆರಳನ್ನು ಮಾಡಿಕೊಟ್ಟಿದ್ದಾನೆ. ಪರ್ವತಗಳಲ್ಲಿ ನಿಮಗೆ ಆಶ್ರಯದಾಣಗ-ಳನ್ನು (ಗುಹೆಗಳನ್ನು) ಮಾಡಿಕೊಟ್ಟಿದ್ದಾನೆ. ನಿಮ್ಮನ್ನು ಸೆಕೆಯಿಂದ ರಕ್ಷಿಸುವ ಅಂಗಿಗಳನ್ನು ಮತ್ತು ಯುದ್ಧದಲ್ಲಿ (ವೈರಿಯಿಂದ) ರಕ್ಷಿಸುವ ಅಂಗಿಗಳನ್ನು ಮಾಡಿಕೊಟ್ಟಿದ್ದಾನೆ. ಈ ರೀತಿ ಅವನು ನಿಮಗೆ ತನ್ನ ಎಲ್ಲಾ ಅನುಗ್ರಹವನ್ನು ಪೂರ್ಣವಾಗಿ ಕರುಣಿಸುತ್ತಿ-ದ್ದಾನೆ. ನೀವು ಅವನಿಗೆ ಶರಣಾಗುವುದಕ್ಕಾಗಿ.

وَٱللَّهُ جَعَلَ لَكُم مِّمَّا خَلَقَ ظِلَٰلٗا وَجَعَلَ
لَكُم مِّنَ ٱلۡجِبَالِ أَكۡنَٰنٗا وَجَعَلَ لَكُمۡ
سَرَٰبِيلَ تَقِيكُمُ ٱلۡحَرَّ وَسَرَٰبِيلَ تَقِيكُم
بَأۡسَكُمۡۚ كَذَٰلِكَ يُتِمُّ نِعۡمَتَهُۥ عَلَيۡكُمۡ
لَعَلَّكُمۡ تُسۡلِمُونَ ٨١

82. (ಪ್ರವಾದಿಯವರೇ) ಅವರೇನಾದರೂ ವಿಮುಖರಾದರೆ—ನಿಮ್ಮ ಕರ್ತವ್ಯವು ಸಂದೇಶವನ್ನು ಸ್ಪಷ್ಟವಾಗಿ ತಲುಪಿಸಿಕೊಡುವುದು ಮಾತ್ರ.

فَإِن تَوَلَّوۡاْ فَإِنَّمَا عَلَيۡكَ ٱلۡبَلَٰغُ ٱلۡمُبِينُ ٨٢

83. ಅವರು ಅಲ್ಲಾಹನ ಅನುಗ್ರಹಗಳನ್ನು ಗುರುತಿಸಿದ ಬಳಿಕವೂ ಅವುಗಳನ್ನು ನಿಷೇಧಿಸುತ್ತಾರೆ. ಅವರಲ್ಲಿ ಹೆಚ್ಚಿನವರೂ ಕೃತಘ್ನರಾಗಿದ್ದಾರೆ.

يَعۡرِفُونَ نِعۡمَتَ ٱللَّهِ ثُمَّ يُنكِرُونَهَا وَأَكۡثَرُهُمُ
ٱلۡكَٰفِرُونَ ٨٣

84. ನಾವು ಎಲ್ಲಾ ಸಮುದಾಯಗಳಿಂದಲೂ ಒಬ್ಬೊಬ್ಬ ಸಾಕ್ಷಿಯನ್ನು

وَيَوۡمَ نَبۡعَثُ مِن كُلِّ أُمَّةٖ شَهِيدٗا ثُمَّ لَا يُؤۡذَنُ

ಎಬ್ಬಿಸುವ ದಿನ. ನಂತರ ಸತ್ಯನಿಷೇಧಿಗಳಿಗೆ (ನೆಪ ಹೇಳಿ ತಪ್ಪಿಸಿಕೊಳ್ಳಲು) ಅನುಮತಿ ನೀಡಲಾಗುವುದಿಲ್ಲ. ಅವರಿಗೆ ಪಶ್ಚಾತ್ತಾಪಪಡಲು ಕೂಡ ಅವಕಾಶ ನೀಡಲಾಗುವುದಿಲ್ಲ.

لِلَّذِينَ كَفَرُواْ وَلَا هُمۡ يُسۡتَعۡتَبُونَ ﴿٨٤﴾

---

85. ಅಕ್ರಮಿಗಳು ಶಿಕ್ಷೆಯನ್ನು ನೋಡುವಾಗ—ಅವರಿಗೆ ಅದರಲ್ಲಿ ರಿಯಾಯಿತಿ ನೀಡುವ ಅಥವಾ ಅವರಿಗೆ ಕಾಲಾವಕಾಶ ನೀಡುವ ವಿಷಯವೇ ಇಲ್ಲ.

وَإِذَا رَءَا ٱلَّذِينَ ظَلَمُواْ ٱلۡعَذَابَ فَلَا يُخَفَّفُ
عَنۡهُمۡ وَلَا هُمۡ يُنظَرُونَ ﴿٨٥﴾

---

86. ಅಲ್ಲಾಹನೊಂದಿಗೆ ಸಹಭಾಗಿತ್ವ (ಶಿರ್ಕ್) ಮಾಡಿದವರು (ಪರಲೋಕದಲ್ಲಿ) ತಾವು ಸಹಭಾಗಿಗಳನ್ನಾಗಿ ಮಾಡಿದವರನ್ನು ಕಂಡಾಗ ಹೇಳುವರು: "ನಮ್ಮ ಪರಿಪಾಲಕನೇ! ನಾವು ನಿನ್ನನ್ನು ಬಿಟ್ಟು ಕರೆದು ಪ್ರಾರ್ಥಿಸುತ್ತಿದ್ದ ಸಹಭಾಗಿಗಳು ಇವರೇ." ಆಗ ಅವರು ಉತ್ತರಿಸುವರು: "ನೀವು ಖಂಡಿತ ಸುಳ್ಳು ಹೇಳುತ್ತಿದ್ದೀರಿ."

وَإِذَا رَءَا ٱلَّذِينَ أَشۡرَكُواْ شُرَكَآءَهُمۡ قَالُواْ رَبَّنَا
هَٰٓؤُلَآءِ شُرَكَآؤُنَا ٱلَّذِينَ كُنَّا نَدۡعُواْ مِن دُونِكَۖ
فَأَلۡقَوۡاْ إِلَيۡهِمُ ٱلۡقَوۡلَ إِنَّكُمۡ لَكَٰذِبُونَ ﴿٨٦﴾

---

87. ಅಂದು ಅವರೆಲ್ಲರೂ ಅಲ್ಲಾಹನ ಮುಂದೆ ಸಂಪೂರ್ಣ ಶರಣಾಗತಿಯನ್ನು ಪ್ರಕಟಿಸುವರು. ಅವರು ಸುಳ್ಳು ಸುಳ್ಳಾಗಿ ಆರೋಪಿಸಿದ್ದೆಲ್ಲವೂ ಅವರಿಂದ ಮರೆಯಾಗುವುವು.

وَأَلۡقَوۡاْ إِلَى ٱللَّهِ يَوۡمَئِذٍ ٱلسَّلَمَۖ وَضَلَّ عَنۡهُم مَّا
كَانُواْ يَفۡتَرُونَ ﴿٨٧﴾

---

88. ಸತ್ಯನಿಷೇಧಿಗಳು ಮತ್ತು ಅಲ್ಲಾಹನ ಮಾರ್ಗದಿಂದ ಜನರನ್ನು ತಡೆದವರು ಯಾರೋ—ಅವರಿಗೆ ನಾವು ಶಿಕ್ಷೆಯ ಮೇಲೆ ಶಿಕ್ಷೆಯನ್ನು ಹೆಚ್ಚಿಸುವೆವು. ಇದು ಅವರು ಮಾಡಿದ ಕಿಡಿಗೇಡಿತನದ ಪ್ರತಿಫಲವಾಗಿದೆ.

ٱلَّذِينَ كَفَرُواْ وَصَدُّواْ عَن سَبِيلِ ٱللَّهِ زِدۡنَٰهُمۡ
عَذَابًا فَوۡقَ ٱلۡعَذَابِ بِمَا كَانُواْ يُفۡسِدُونَ ﴿٨٨﴾

---

89. (ಪ್ರವಾದಿಯವರೇ) ನಾವು ಎಲ್ಲಾ ಸಮುದಾಯಗಳ ವಿರುದ್ಧ ಅವರಿಂದಲೇ ಒಬ್ಬ ಸಾಕ್ಷಿಯನ್ನು ನಿಲ್ಲಿಸುವ ಮತ್ತು ಇವರ ವಿರುದ್ಧ ಸಾಕ್ಷಿಯಾಗಿ ನಿಮ್ಮನ್ನು ನಿಲ್ಲಿಸುವ ದಿನ! ಎಲ್ಲಾ ವಿಷಯಗಳಿಗೂ ವಿವರಣೆ ನೀಡುವ ಈ ಗ್ರಂಥವನ್ನು ನಾವು ನಿಮಗೆ ಅವತೀರ್ಣಗೊಳಿಸಿದ್ದೇವೆ. ಇದು ಮುಸಲ್ಮಾನರಿಗೆ ಸನ್ಮಾರ್ಗದರ್ಶಿ, ದಯೆ ಮತ್ತು ಸುವಾರ್ತೆಯಾಗಿದೆ.

وَيَوۡمَ نَبۡعَثُ فِي كُلِّ أُمَّةٖ شَهِيدًا عَلَيۡهِم مِّنۡ
أَنفُسِهِمۡۖ وَجِئۡنَا بِكَ شَهِيدًا عَلَىٰ هَٰٓؤُلَآءِۚ وَنَزَّلۡنَا
عَلَيۡكَ ٱلۡكِتَٰبَ تِبۡيَٰنٗا لِّكُلِّ شَيۡءٖ وَهُدٗى
وَرَحۡمَةٗ وَبُشۡرَىٰ لِلۡمُسۡلِمِينَ ﴿٨٩﴾

---

90. ನಿಶ್ಚಯವಾಗಿಯೂ, ಅಲ್ಲಾಹು ನ್ಯಾಯವನ್ನು, ಒಳಿತನ್ನು ಮತ್ತು ಹತ್ತಿರದ ಸಂಬಂಧಿಕರಿಗೆ (ನೆರವು) ನೀಡಲು ಆಜ್ಞಾಪಿಸುತ್ತಾನೆ. ಅಶ್ಲೀಲಕೃತ್ಯಗಳು, ದುರಾಚಾರಗಳು ಮತ್ತು ಅತಿರೇಕಗಳನ್ನು ವಿರೋಧಿಸುತ್ತಾನೆ. ನೀವು ಉಪದೇಶ ಸ್ವೀಕರಿಸುವುದಕ್ಕಾಗಿ ಅವನು ನಿಮಗೆ ಉಪದೇಶ ನೀಡುತ್ತಿದ್ದಾನೆ.

۞إِنَّ ٱللَّهَ يَأۡمُرُ بِٱلۡعَدۡلِ وَٱلۡإِحۡسَٰنِ وَإِيتَآيِٕ ذِي
ٱلۡقُرۡبَىٰ وَيَنۡهَىٰ عَنِ ٱلۡفَحۡشَآءِ وَٱلۡمُنكَرِ وَٱلۡبَغۡيِۚ
يَعِظُكُمۡ لَعَلَّكُمۡ تَذَكَّرُونَ ﴿٩٠﴾

---

91. ನೀವು ಕರಾರು ಮಾಡಿದರೆ ಅಲ್ಲಾಹನ ಕರಾರನ್ನು ನೆರವೇರಿಸಿರಿ. ನೀವು ಆಣೆಗಳನ್ನು—ಅವುಗಳನ್ನು ಖಾತ್ರಿಪಡಿಸಿದ ನಂತರ

وَأَوۡفُواْ بِعَهۡدِ ٱللَّهِ إِذَا عَٰهَدتُّمۡ وَلَا تَنقُضُواْ
ٱلۡأَيۡمَٰنَ بَعۡدَ تَوۡكِيدِهَا وَقَدۡ جَعَلۡتُمُ ٱللَّهَ

| | |
|---|---|
| ಮುರಿಯಲು ಹೋಗಬೇಡಿ. ನೀವಂತೂ ಅಲ್ಲಾಹನನ್ನು ನಿಮಗೆ ಜಾಮೀನಾಗಿ ನಿಲ್ಲಿಸಿದ್ದೀರಿ. ನಿಶ್ಚಯವಾಗಿಯೂ ನೀವು ಮಾಡುವ ಕರ್ಮಗಳನ್ನು ಅಲ್ಲಾಹು ತಿಳಿಯುತ್ತಾನೆ. | عَلَيْكُمْ كَفِيلًاۚ إِنَّ ٱللَّهَ يَعْلَمُ مَا تَفْعَلُونَ ﴿٩١﴾ |
| 92. ನೂಲನ್ನು ಗಟ್ಟಿಯಾಗಿ ಸುತ್ತಿದ ಬಳಿಕ ಅದನ್ನು ಎಳೆ ಎಳೆಯಾಗಿ ಬಿಡಿಸಿ ಎಸೆಯುವ ಮಹಿಳೆಯಂತೆ ನೀವಾಗಬೇಡಿ—ನಿಮ್ಮಲ್ಲೊಂದು ಗುಂಪು ಇನ್ನೊಂದು ಗುಂಪಿಗಿಂತ ಹೆಚ್ಚಾಗಿರುವ ಕಾರಣ ನೀವು ನಿಮ್ಮ ಆಣೆಗಳನ್ನು (ಕರಾರುಗಳನ್ನು) ಪರಸ್ಪರ ವಂಚನೆಯ ಮಾರ್ಗವಾಗಿ ಮಾಡುತ್ತಿದ್ದೀರಿ.[1] ಅಲ್ಲಾಹು ಅದರ ಮೂಲಕ ಕೇವಲ ನಿಮ್ಮನ್ನು ಪರೀಕ್ಷಿಸುತ್ತಿದ್ದಾನೆ. ಯಾವ ವಿಷಯದಲ್ಲಿ ನೀವು ಭಿನ್ನಮತ ತಳೆದಿದ್ದಿರೋ ಅದನ್ನು ಪುನರುತ್ಥಾನ ದಿನದಂದು ಅವನು ನಿಮಗೆ ಖಂಡಿತ ವಿವರಿಸಿಕೊಡುವನು. | وَلَا تَكُونُواْ كَٱلَّتِي نَقَضَتْ غَزْلَهَا مِنۢ بَعْدِ قُوَّةٍ أَنكَٰثًا تَتَّخِذُونَ أَيْمَٰنَكُمْ دَخَلًا بَيْنَكُمْ أَن تَكُونَ أُمَّةٌ هِيَ أَرْبَىٰ مِنْ أُمَّةٍۚ إِنَّمَا يَبْلُوكُمُ ٱللَّهُ بِهِۦۚ وَلَيُبَيِّنَنَّ لَكُمْ يَوْمَ ٱلْقِيَٰمَةِ مَا كُنتُمْ فِيهِ تَخْتَلِفُونَ ﴿٩٢﴾ |
| 93. ಅಲ್ಲಾಹು ಇಚ್ಛಿಸುತ್ತಿದ್ದರೆ ಅವನು ನಿಮ್ಮೆಲ್ಲರನ್ನೂ ಒಂದೇ ಸಮುದಾಯವಾಗಿ ಮಾಡುತ್ತಿದ್ದನು. ಆದರೆ ಅವನು ಇಚ್ಛಿಸುವವ-ವರನ್ನು ಅವನು ದಾರಿತಪ್ಪಿಸುತ್ತಾನೆ ಮತ್ತು ಅವನು ಇಚ್ಛಿಸುವವ-ರನ್ನು ಸನ್ಮಾರ್ಗದಲ್ಲಿ ಸೇರಿಸುತ್ತಾನೆ. ನೀವು ಮಾಡುತ್ತಿದ್ದ ಕರ್ಮಗಳ ಬಗ್ಗೆ ನಿಮ್ಮೊಡನೆ ಖಂಡಿತ ಪ್ರಶ್ನಿಸಲಾಗುವುದು. | وَلَوْ شَآءَ ٱللَّهُ لَجَعَلَكُمْ أُمَّةً وَٰحِدَةً وَلَٰكِن يُضِلُّ مَن يَشَآءُ وَيَهْدِي مَن يَشَآءُۚ وَلَتُسْـَٔلُنَّ عَمَّا كُنتُمْ تَعْمَلُونَ ﴿٩٣﴾ |
| 94. ನೀವು ನಿಮ್ಮ ಆಣೆಗಳನ್ನು ಪರಸ್ಪರ ವಂಚನೆ ಮಾಡುವುದಕ್ಕಾಗಿ ಬಳಸಬೇಡಿ. ಇದರಿಂದ ನಿಮ್ಮ ಪಾದಗಳು ಸ್ಥಿರವಾಗಿ ನಿಂತ ಬಳಿಕವೂ ಅಲುಗಾಡಬಹುದು ಮತ್ತು ಅಲ್ಲಾಹನ ಮಾರ್ಗದಿಂದ ಜನರನ್ನು ತಡೆದ ನಿಮಿತ್ತ ನೀವು ಶಿಕ್ಷೆಯ ರುಚಿಯನ್ನು ನೋಡುವಿರಿ. (ಪರಲೋಕದಲ್ಲಿ) ನಿಮಗೆ ಕಠೋರವಾದ ಶಿಕ್ಷೆಯೂ ಇದೆ. | وَلَا تَتَّخِذُوٓاْ أَيْمَٰنَكُمْ دَخَلًا بَيْنَكُمْ فَتَزِلَّ قَدَمٌۢ بَعْدَ ثُبُوتِهَا وَتَذُوقُواْ ٱلسُّوٓءَ بِمَا صَدَدتُّمْ عَن سَبِيلِ ٱللَّهِ وَلَكُمْ عَذَابٌ عَظِيمٌ ﴿٩٤﴾ |
| 95. ಅಲ್ಲಾಹನ ಕರಾರನ್ನು ತುಚ್ಛ ಬೆಲೆಗೆ ಮಾರಾಟ ಮಾಡಬೇಡಿ. ಅಲ್ಲಾಹನ ಬಳಿ ಏನಿದೆಯೋ ಅದೇ ನಿಮಗೆ ಉತ್ತಮ. ನೀವು ತಿಳಿದವರಾಗಿದ್ದರೆ. | وَلَا تَشْتَرُواْ بِعَهْدِ ٱللَّهِ ثَمَنًا قَلِيلًاۚ إِنَّمَا عِندَ ٱللَّهِ هُوَ خَيْرٌ لَّكُمْ إِن كُنتُمْ تَعْلَمُونَ ﴿٩٥﴾ |
| 96. ನಿಮ್ಮ ಬಳಿ ಏನಿವೆಯೋ ಅವೆಲ್ಲವೂ ನಶ್ವರವಾಗಿವೆ. ಆದರೆ ಅಲ್ಲಾಹನ ಬಳಿ ಏನಿವೆಯೋ ಅವು ಶಾಶ್ವತವಾಗಿವೆ. | مَا عِندَكُمْ يَنفَدُ وَمَا عِندَ ٱللَّهِ بَاقٍۗ وَلَنَجْزِيَنَّ ٱلَّذِينَ صَبَرُوٓاْ أَجْرَهُم بِأَحْسَنِ مَا |

[1] ಅಂದರೆ ನಾವು ಯಾವುದೇ ಸ್ಥಿತಿಯಲ್ಲೂ ನಿಮಗೆ ಸಹಾಯ ಮಾಡುತ್ತೇವೆಂದು ಒಂದು ಗುಂಪಿಗೆ ವಾಗ್ದಾನ ಮಾಡಿ ಅವರೊಡನೆ ಮೈತ್ರಿಯ ಕರಾರು ಮಾಡುತ್ತೀರಿ. ನಂತರ ಅವರಿಗೆ ವಿರುದ್ಧವಾಗಿ ಅವರಿಗಿಂತಲೂ ಹೆಚ್ಚು ಜನಬಲ ಅಥವಾ ಧನಬಲವಿರುವ ಗುಂಪಿನೊಂದಿಗೆ ಮೈತ್ರಿ ಮಾಡುವ ಅವಕಾಶ ಸಿಕ್ಕಿದರೆ ಮೊದಲನೆ ಗುಂಪಿನೊಂದಿಗೆ ಮಾಡಿದ ಕರಾರನ್ನು ಎಸೆದು ಈ ಗುಂಪಿನೊಂದಿಗೆ ಮೈತ್ರಿಯ ಕರಾರು ಮಾಡಿ-ಕೊಳ್ಳುತ್ತೀರಿ. ಇಂತಹ ಸ್ಥಿತಿಯು ಇಸ್ಲಾಮೀ ಪೂರ್ವ ಜಾಹಿಲೀ ಕಾಲದಲ್ಲಿ ಸಾಮಾನ್ಯವಾಗಿತ್ತು. ಇದನ್ನು ಇಸ್ಲಾಂ ವಿರೋಧಿಸುತ್ತದೆ.

كَانُواْ يَعۡمَلُونَ ٩٦

ತಾಳ್ಮೆಯಿಂದ ಜೀವಿಸುವವರು ಯಾರೋ—ಅವರು ಮಾಡುವ ಅತ್ಯುತ್ತಮ ಕರ್ಮಗಳಿಗೆ ನಾವು ಅತ್ಯುತ್ತಮ ಪ್ರತಿಫಲವನ್ನು ನೀಡುವೆವು.

---

مَنۡ عَمِلَ صَٰلِحٗا مِّن ذَكَرٍ أَوۡ أُنثَىٰ وَهُوَ مُؤۡمِنٞ فَلَنُحۡيِيَنَّهُۥ حَيَوٰةٗ طَيِّبَةٗۖ وَلَنَجۡزِيَنَّهُمۡ أَجۡرَهُم بِأَحۡسَنِ مَا كَانُواْ يَعۡمَلُونَ ٩٧

97. ಗಂಡಾಗಿರಲಿ, ಹೆಣ್ಣಾಗಿರಲಿ—ಯಾರು ಸತ್ಯವಿಶ್ವಾಸಿಯಾ-ಗಿದ್ದು ಸತ್ಕರ್ಮಗಳನ್ನು ಮಾಡುತ್ತಾರೋ ಅವರಿಗೆ ನಾವು ಖಂಡಿತವಾಗಿಯೂ ಅತ್ಯುತ್ತಮ ಬದುಕನ್ನು ನೀಡುವೆವು. ಅವರು ಮಾಡುವ ಅತ್ಯುತ್ತಮ ಕರ್ಮಗಳಿಗೆ ನಾವು ಅತ್ಯುತ್ತಮ ಪ್ರತಿಫಲವನ್ನು ನೀಡುವೆವು.

---

فَإِذَا قَرَأۡتَ ٱلۡقُرۡءَانَ فَٱسۡتَعِذۡ بِٱللَّهِ مِنَ ٱلشَّيۡطَٰنِ ٱلرَّجِيمِ ٩٨

98. ನೀವು ಕುರ್‌ಆನ್ ಪಠಿಸುವಾಗ ಬಹಿಷ್ಕೃತ ಶೈತಾನನಿಂದ ಅಲ್ಲಾಹನಲ್ಲಿ ಅಭಯ ಯಾಚಿಸಿರಿ.

---

إِنَّهُۥ لَيۡسَ لَهُۥ سُلۡطَٰنٌ عَلَى ٱلَّذِينَ ءَامَنُواْ وَعَلَىٰ رَبِّهِمۡ يَتَوَكَّلُونَ ٩٩

99. ಸತ್ಯವಿಶ್ವಾಸಿಗಳು ಮತ್ತು ತಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ಭರವಸೆಯಿಡುವವರ ಮೇಲೆ ಅವನಿಗೆ ಯಾವುದೇ ಅಧಿಕಾರವಿಲ್ಲ.

---

إِنَّمَا سُلۡطَٰنُهُۥ عَلَى ٱلَّذِينَ يَتَوَلَّوۡنَهُۥ وَٱلَّذِينَ هُم بِهِۦ مُشۡرِكُونَ ١٠٠

100. ಅವನಿಗೆ ಅಧಿಕಾರವಿರುವುದು ಅವನನ್ನು ಮಿತ್ರನಾಗಿ ಸ್ವೀಕರಿಸಿದವರ ಮೇಲೆ ಮತ್ತು ಅಲ್ಲಾಹನೊಂದಿಗೆ ಸಹಭಾಗಿತ್ವ (ಶಿರ್ಕ್) ಮಾಡುವವರ ಮೇಲೆ ಮಾತ್ರ.

---

وَإِذَا بَدَّلۡنَآ ءَايَةٗ مَّكَانَ ءَايَةٖ وَٱللَّهُ أَعۡلَمُ بِمَا يُنَزِّلُ قَالُوٓاْ إِنَّمَآ أَنتَ مُفۡتَرِۭۚ بَلۡ أَكۡثَرُهُمۡ لَا يَعۡلَمُونَ ١٠١

101. ನಾವು ಒಂದು ವಚನದ ಸ್ಥಾನದಲ್ಲಿ ಇನ್ನೊಂದು ವಚನವನ್ನು ಬದಲಾಯಿಸಿದರೆ— ಅಲ್ಲಾಹು ಏನು ಅವತೀರ್ಣಗೊಳಿ-ಸುತ್ತಿದ್ದಾನೆಂದು ಅವನಿಗೆ ಪೂರ್ಣ ಜ್ಞಾನವಿದೆ—ಅವರು ಹೇಳುತ್ತಾರೆ: “ನೀನು ಸುಳ್ಳಾರೋಪ ಮಾಡುವವನಾಗಿರುವೆ.” ಅಲ್ಲ, ವಾಸ್ತವವಾಗಿ ಅವರಲ್ಲಿ ಹೆಚ್ಚಿನವರಿಗೂ ವಿಷಯವೇನೆಂದೇ ತಿಳಿದಿಲ್ಲ.

---

قُلۡ نَزَّلَهُۥ رُوحُ ٱلۡقُدُسِ مِن رَّبِّكَ بِٱلۡحَقِّ لِيُثَبِّتَ ٱلَّذِينَ ءَامَنُواْ وَهُدٗى وَبُشۡرَىٰ لِلۡمُسۡلِمِينَ ١٠٢

102. (ಪ್ರವಾದಿಯವರೇ) ಹೇಳಿರಿ: “ಸತ್ಯವಿಶ್ವಾಸಿಗಳನ್ನು ದೃಢವಾಗಿ ನಿಲ್ಲಿಸಲು ಮತ್ತು ಮುಸಲ್ಮಾನರಿಗೆ ಸನ್ಮಾರ್ಗದರ್ಶಿ ಮತ್ತು ಸುವಾರ್ತೆಯಾಗಿ ಪವಿತ್ರಾತ್ಮನು (ಜಿಬ್ರೀಲ್) ಇದನ್ನು ಅಲ್ಲಾಹನಿಂದ ಇಳಿಸಿ ತಂದಿದ್ದಾರೆ.”

---

وَلَقَدۡ نَعۡلَمُ أَنَّهُمۡ يَقُولُونَ إِنَّمَا يُعَلِّمُهُۥ بَشَرٞۗ لِّسَانُ ٱلَّذِي يُلۡحِدُونَ إِلَيۡهِ أَعۡجَمِيّٞ وَهَٰذَا لِسَانٌ عَرَبِيّٞ مُّبِينٌ ١٠٣

103. “ಇವನಿಗೆ (ಪ್ರವಾದಿಗೆ) ಯಾರೋ ಒಬ್ಬ ಮನುಷ್ಯ ಕಲಿಸಿಕೊಡು-ತ್ತಿದ್ದಾನೆ” ಎಂದು ಅವರು ಹೇಳುತ್ತಿದ್ದಾರೆಂದು ನಮಗೆ ಖಂಡಿತ ತಿಳಿದಿದೆ. ಅವರು ಉಲ್ಲೇಖಿಸುವ ಆ ವ್ಯಕ್ತಿಯದ್ದು ಅಜಮಿ ಭಾಷೆ. ಆದರೆ ಇದು ಸ್ಪಷ್ಟ ಅರಬ್ಬಿ ಭಾಷೆಯಲ್ಲಿದೆ.[1]

---

[1] ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಕಾಲದಲ್ಲಿ ತೌರಾತ್ ಇಂಜೀಲ್ ಕಲಿತ ಕೆಲವು ಗುಲಾಮರಿದ್ದರು.

104. ಅಲ್ಲಾಹನ ವಚನಗಳಲ್ಲಿ ವಿಶ್ವಾಸವಿಡದವರು ಯಾರೋ— ಅವರಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ. ಅವರಿಗೆ ಯಾತನಾಮಯ ಶಿಕ್ಷೆಯಿದೆ.

إِنَّ ٱلَّذِينَ لَا يُؤۡمِنُونَ بِـَٔايَٰتِ ٱللَّهِ لَا يَهۡدِيهِمُ ٱللَّهُ وَلَهُمۡ عَذَابٌ أَلِيمٌ ﴿١٠٤﴾

105. ಅಲ್ಲಾಹನ ವಚನಗಳಲ್ಲಿ ವಿಶ್ವಾಸವಿಡದವರೇ ಸುಳ್ಳು ಸುಳ್ಳಾಗಿ ಆರೋಪಿಸುವವರು. ಅವರೇ ನಿಜವಾದ ಸುಳ್ಳುಗಾರರು.

إِنَّمَا يَفۡتَرِي ٱلۡكَذِبَ ٱلَّذِينَ لَا يُؤۡمِنُونَ بِـَٔايَٰتِ ٱللَّهِۖ وَأُوْلَٰٓئِكَ هُمُ ٱلۡكَٰذِبُونَ ﴿١٠٥﴾

106. ಸತ್ಯವಿಶ್ವಾಸಿಯಾದ ಬಳಿಕವೂ ಅಲ್ಲಾಹನನ್ನು ನಿಷೇಧಿಸುವವರು ಯಾರೋ—ಹೃದಯವು ಸತ್ಯವಿಶ್ವಾಸದಲ್ಲಿ ದೃಢವಾಗಿದ್ದು ಬಲವಂತಕ್ಕೊಳಗಾಗಿ (ಸತ್ಯನಿಷೇಧದ ಮಾತು ಹೇಳುವವರು) ಇದರಿಂದ ಹೊರತಾಗಿದ್ದಾರೆ.[1] ಆದರೆ ಯಾರು ಮುಕ್ತ ಹೃದಯದಿಂದ ನಿಷೇಧಿಸುತ್ತಾರೋ, ಅವರು ಅಲ್ಲಾಹನ ಕೋಪಕ್ಕೆ ತುತ್ತಾಗುತ್ತಾರೆ. ಅವರಿಗೆ ಭಯಾನಕ ಶಿಕ್ಷೆಯೂ ಇದೆ.

مَن كَفَرَ بِٱللَّهِ مِنۢ بَعۡدِ إِيمَٰنِهِۦٓ إِلَّا مَنۡ أُكۡرِهَ وَقَلۡبُهُۥ مُطۡمَئِنُّۢ بِٱلۡإِيمَٰنِ وَلَٰكِن مَّن شَرَحَ بِٱلۡكُفۡرِ صَدۡرٗا فَعَلَيۡهِمۡ غَضَبٞ مِّنَ ٱللَّهِ وَلَهُمۡ عَذَابٌ عَظِيمٞ ﴿١٠٦﴾

107. ಅದೇಕೆಂದರೆ, ಅವರು ಪರಲೋಕಕ್ಕಿಂತಲೂ ಇಹಲೋಕವನ್ನೇ ಹೆಚ್ಚು ಇಷ್ಟಪಡುತ್ತಾರೆ. ನಿಶ್ಚಯವಾಗಿಯೂ ಸತ್ಯನಿಷೇಧಿಗಳಾದ ಜನರಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ.

ذَٰلِكَ بِأَنَّهُمُ ٱسۡتَحَبُّواْ ٱلۡحَيَوٰةَ ٱلدُّنۡيَا عَلَى ٱلۡأٓخِرَةِ وَأَنَّ ٱللَّهَ لَا يَهۡدِي ٱلۡقَوۡمَ ٱلۡكَٰفِرِينَ ﴿١٠٧﴾

108. ಅವರು ಯಾರೆಂದರೆ, ಅಲ್ಲಾಹು ಅವರ ಹೃದಯಗಳಿಗೆ, ಕಿವಿಗಳಿಗೆ ಮತ್ತು ದೃಷ್ಟಿಗಳಿಗೆ ಮೊಹರು ಹಾಕಿದವರು. ಅವರೇ ನಿರ್ಲಕ್ಷ್ಯರಾಗಿರುವವರು.

أُوْلَٰٓئِكَ ٱلَّذِينَ طَبَعَ ٱللَّهُ عَلَىٰ قُلُوبِهِمۡ وَسَمۡعِهِمۡ وَأَبۡصَٰرِهِمۡۖ وَأُوْلَٰٓئِكَ هُمُ ٱلۡغَٰفِلُونَ ﴿١٠٨﴾

109. ಸಂಶಯವೇ ಇಲ್ಲ. ಪರಲೋಕದಲ್ಲಿ ಅವರು ಸಂಪೂರ್ಣ ನಷ್ಟಹೊಂದಿದವರಾಗಿರುವರು.

لَا جَرَمَ أَنَّهُمۡ فِي ٱلۡأٓخِرَةِ هُمُ ٱلۡخَٰسِرُونَ ﴿١٠٩﴾

110. ಹಿಂಸೆಗೆ ಗುರಿಯಾದ ಬಳಿಕವೂ ವಲಸೆ (ಹಿಜ್ರ) ಮಾಡಿದವರು, ನಂತರ ಯುದ್ಧ ಮಾಡಿದವರು ಮತ್ತು ಸ್ಥೈರ್ಯ ತೋರಿದವರು ಯಾರೋ—ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು ಅವರನ್ನು ಕ್ಷಮಿಸುವನು ಮತ್ತು ಅವರಿಗೆ ದಯೆ ತೋರುವನು.

ثُمَّ إِنَّ رَبَّكَ لِلَّذِينَ هَاجَرُواْ مِنۢ بَعۡدِ مَا فُتِنُواْ ثُمَّ جَٰهَدُواْ وَصَبَرُوٓاْ إِنَّ رَبَّكَ مِنۢ بَعۡدِهَا لَغَفُورٞ رَّحِيمٞ ﴿١١٠﴾

---

ಅವರು ಸ್ಪಷ್ಟ ಮತ್ತು ನಿರರ್ಗಳವಾಗಿ ಅರಬ್ಬಿ ಮಾತನಾಡುತ್ತಿರಲಿಲ್ಲ. ಅವರು ನಂತರ ಇಸ್ಲಾಂ ಸ್ವೀಕರಿಸಿದರು. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇವರಿಂದ ಕಲಿತ ಮಾತುಗಳನ್ನು ಅಲ್ಲಾಹನ ವಚನಗಳಾದ ಕುರ್‌ಆನ್ ಎಂದು ಹೇಳುತ್ತಿದ್ದಾರೆಂದು ಮಕ್ಕಾದ ಸತ್ಯನಿಷೇಧಿಗಳು ಆರೋಪಿಸಿದರು. ಅವರಿಗೆ ಈ ವಚನದಲ್ಲಿ ಉತ್ತರ ನೀಡಲಾಗಿದೆ. ಅದೇನೆಂದರೆ, ನೀವು ಆರೋಪಿಸುವ ಆ ಜನರು ಶುದ್ಧ ಅರಬ್ಬಿ ಭಾಷೆ ಮಾತನಾಡುವವರಲ್ಲ. ಆದರೆ ಈ ಕುರ್‌ಆನ್ ಶುದ್ಧ ಮತ್ತು ಪರಮೋಚ್ಛ ಮಟ್ಟದ ಅರಬ್ಬಿ ಸಾಹಿತ್ಯ ಶೈಲಿಯಲ್ಲಿದೆ. ಇದರಂತಿರುವ ಒಂದು ಅಧ್ಯಾಯವನ್ನು ರಚಿಸಿ ತರಲು ಸಂಪೂರ್ಣ ಅರೇಬಿಯನ್ ಪರ್ಯಾಯ ದ್ವೀಪವೇ ವಿಫಲವಾಗಿದೆ. ಅರಬ್ಬಿ ಭಾಷೆ ಮಾತನಾಡದ ಜನರಿಗೂ, ಅರಬ್ಬಿ ಭಾಷೆಯನ್ನು ನಿರರ್ಗಳವಾಗಿ ಮಾತನಾಡಲಾಗದ ಜನರಿಗೂ ಅಜಮಿ ಎಂದು ಕರೆಯಲಾಗುತ್ತದೆ.

[1] ಮುಸ್ಲಿಂ ವಿದ್ವಾಂಸರ ಒಕ್ಕೊರಳ ಅಭಿಪ್ರಾಯದಂತೆ ಬಲವಂತಕ್ಕೊಳಗಾಗಿ ಸತ್ಯನಿಷೇಧದ ಮಾತು ಹೇಳುವವನು ಅಥವಾ ಸತ್ಯನಿಷೇಧದ ಕೆಲಸ ಮಾಡುವವನು—ಅವನ ಹೃದಯವು ಸತ್ಯವಿಶ್ವಾಸದಲ್ಲಿ ದೃಢವಾಗಿದ್ದರೆ ಅವನು ಸತ್ಯನಿಷೇಧಿಯಾಗುವುದಿಲ್ಲ.

111. ಪ್ರತಿಯೊಬ್ಬ ವ್ಯಕ್ತಿಯೂ ತನ್ನ ಪರವಾಗಿ ತರ್ಕಿಸುತ್ತಾ ಬರುವ ಮತ್ತು ಪ್ರತಿಯೊಬ್ಬರಿಗೂ ಅವರು ಮಾಡಿದ ಕರ್ಮಗಳಿಗೆ ಪೂರ್ಣ ಪ್ರತಿಫಲವನ್ನು ನೀಡಲಾಗುವ ದಿನ. ಅವರಿಗೆ ಯಾವುದೇ ಅನ್ಯಾಯವಾಗುವುದಿಲ್ಲ.

يَوۡمَ تَأۡتِي كُلُّ نَفۡسٖ تُجَٰدِلُ عَن نَّفۡسِهَا وَتُوَفَّىٰ كُلُّ نَفۡسٖ مَّا عَمِلَتۡ وَهُمۡ لَا يُظۡلَمُونَ ١١١

112. ಅಲ್ಲಾಹು ಒಂದು ಉದಾಹರಣೆಯನ್ನು ಕೊಡುತ್ತಾನೆ. ನಿರ್ಭಯ ಮತ್ತು ನೆಮ್ಮದಿಯಾಗಿದ್ದ ಒಂದು ಊರು. ಅದಕ್ಕೆ ಎಲ್ಲಾ ಕಡೆಗಳಿಂದಲೂ ಯಥೇಷ್ಟ ಆಹಾರ ಸಾಮಗ್ರಿಗಳು ಬರುತ್ತಿದ್ದವು. ಆದರೆ ಅವರು ಅಲ್ಲಾಹನ ಅನುಗ್ರಹಗಳನ್ನು ನಿಷೇಧಿಸಿದರು. ಆಗ ಅಲ್ಲಾಹು ಅವರಿಗೆ ಹಸಿವು ಮತ್ತು ಭಯದ ವಾತಾವರಣವನ್ನು ಅನುಭವಿಸುವಂತೆ ಮಾಡಿದನು. ಇದು ಅವರು ಮಾಡಿದ ಕರ್ಮಗಳ ಫಲವಾಗಿತ್ತು.

وَضَرَبَ ٱللَّهُ مَثَلٗا قَرۡيَةٗ كَانَتۡ ءَامِنَةٗ مُّطۡمَئِنَّةٗ يَأۡتِيهَا رِزۡقُهَا رَغَدٗا مِّن كُلِّ مَكَانٖ فَكَفَرَتۡ بِأَنۡعُمِ ٱللَّهِ فَأَذَٰقَهَا ٱللَّهُ لِبَاسَ ٱلۡجُوعِ وَٱلۡخَوۡفِ بِمَا كَانُواْ يَصۡنَعُونَ ١١٢

113. ಅವರಿಗೆ ಅವರಿಂದಲೇ ಒಬ್ಬ ಸಂದೇಶವಾಹಕರು ಬಂದಿದ್ದರು. ಆದರೆ ಅವರು ಆ ಸಂದೇಶವಾಹಕರನ್ನು ನಿಷೇಧಿಸಿದರು. ಆಗ ಅವರು ಅಕ್ರಮವೆಸಗುತ್ತಿದ್ದಾಗಲೇ ಶಿಕ್ಷೆಯು ಅವರನ್ನು ಹಿಡಿದುಕೊಂಡಿತು.

وَلَقَدۡ جَآءَهُمۡ رَسُولٞ مِّنۡهُمۡ فَكَذَّبُوهُ فَأَخَذَهُمُ ٱلۡعَذَابُ وَهُمۡ ظَٰلِمُونَ ١١٣

114. ಅಲ್ಲಾಹು ನಿಮಗೆ ಒದಗಿಸಿದ ಧರ್ಮಸಮ್ಮತ ಮತ್ತು ಶುದ್ಧ ವಸ್ತುಗಳನ್ನು ತಿನ್ನಿರಿ. ಅಲ್ಲಾಹನ ಅನುಗ್ರಹಗಳಿಗೆ ಕೃತಜ್ಞರಾಗಿರಿ. ನೀವು ಅವನನ್ನು ಮಾತ್ರ ಆರಾಧಿಸುವವರಾಗಿದ್ದರೆ.

فَكُلُواْ مِمَّا رَزَقَكُمُ ٱللَّهُ حَلَٰلٗا طَيِّبٗا وَٱشۡكُرُواْ نِعۡمَتَ ٱللَّهِ إِن كُنتُمۡ إِيَّاهُ تَعۡبُدُونَ ١١٤

115. ಅವನು ನಿಮಗೆ ಶವ, ರಕ್ತ, ಹಂದಿ ಮಾಂಸ ಮತ್ತು ಅಲ್ಲಾಹೇತರರ ಹೆಸರನ್ನು ಘೋಷಿಸಲಾದ ವಸ್ತುಗಳನ್ನು ಮಾತ್ರ ನಿಷೇಧಿಸಿದ್ದಾನೆ. ಆದರೆ ಯಾರಾದರೂ (ಇವುಗಳನ್ನು ಸೇವಿಸಲು) ನಿರ್ಬಂಧಿತನಾದರೆ ಅವನ ಮೇಲೆ ದೋಷವಿಲ್ಲ. ಆದರೆ ಅವನು ಅಗತ್ಯಕ್ಕಿಂತ ಹೆಚ್ಚು ಸೇವಿಸಬಾರದು ಮತ್ತು (ಅಲ್ಲಾಹು ಅನುಮತಿಸಿದ) ಎಲ್ಲೆಯನ್ನು ಮೀರಬಾರದು. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ಕರುಣೆ ತೋರುವವನಾಗಿದ್ದಾನೆ.

إِنَّمَا حَرَّمَ عَلَيۡكُمُ ٱلۡمَيۡتَةَ وَٱلدَّمَ وَلَحۡمَ ٱلۡخِنزِيرِ وَمَآ أُهِلَّ لِغَيۡرِ ٱللَّهِ بِهِۦۖ فَمَنِ ٱضۡطُرَّ غَيۡرَ بَاغٖ وَلَا عَادٖ فَإِنَّ ٱللَّهَ غَفُورٞ رَّحِيمٞ ١١٥

116. ನೀವು ಯಾವುದೇ ವಸ್ತುವನ್ನೂ ನಿಮ್ಮ ನಾಲಗೆಗಳಿಂದ ಸುಳ್ಳು ಸುಳ್ಳಾಗಿ "ಇದು ಧರ್ಮಸಮ್ಮತ ಮತ್ತು ಇದು ಧರ್ಮನಿಷಿದ್ಧ" ಎಂದು ಹೇಳಬೇಡಿ. ಇದರಿಂದ ನೀವು ಅಲ್ಲಾಹನ ಮೇಲೆ ಸುಳ್ಳು ಆರೋಪಿಸಿದವರಾಗುವಿರಿ. ಅಲ್ಲಾಹನ ಮೇಲೆ ಸುಳ್ಳು ಆರೋಪಿಸುವವರು ಖಂಡಿತ ಯಶಸ್ವಿಯಾಗುವುದಿಲ್ಲ.

وَلَا تَقُولُواْ لِمَا تَصِفُ أَلۡسِنَتُكُمُ ٱلۡكَذِبَ هَٰذَا حَلَٰلٞ وَهَٰذَا حَرَامٞ لِّتَفۡتَرُواْ عَلَى ٱللَّهِ ٱلۡكَذِبَۚ إِنَّ ٱلَّذِينَ يَفۡتَرُونَ عَلَى ٱللَّهِ ٱلۡكَذِبَ لَا يُفۡلِحُونَ ١١٦

117. ಅವರಿಗಿರುವುದು ತಾತ್ಕಾಲಿಕ ಆನಂದ ಮಾತ್ರ. (ಪರಲೋಕದಲ್ಲಿ) ಅವರಿಗೆ ಯಾತನಾಮಯ ಶಿಕ್ಷೆಯಿದೆ.

مَتَٰعٞ قَلِيلٞ وَلَهُمۡ عَذَابٌ أَلِيمٞ ١١٧

118. (ಪ್ರವಾದಿಯವರೇ) ನಾವು ನಿಮಗೆ ಇದಕ್ಕೆ ಮೊದಲು ತಿಳಿಸಿಕೊಟ್ಟ ವಸ್ತುಗಳನ್ನು ನಾವು ಯಹೂದಿಗಳಿಗೆ ನಿಷೇಧಿಸಿದ್ದೇವೆ.[1] ನಾವು ಅವರಿಗೆ ಯಾವುದೇ ಅನ್ಯಾಯ ಮಾಡಿಲ್ಲ. ಆದರೆ ಅವರು ಅವರೊಂದಿಗೇ ಅನ್ಯಾಯ ಮಾಡುತ್ತಿದ್ದಾರೆ.

وَعَلَى ٱلَّذِينَ هَادُواْ حَرَّمۡنَا مَا قَصَصۡنَا عَلَيۡكَ مِن قَبۡلُۖ وَمَا ظَلَمۡنَٰهُمۡ وَلَٰكِن كَانُوٓاْ أَنفُسَهُمۡ يَظۡلِمُونَ ١١٨

119. ಯಾರು ಅಜ್ಞಾನದಿಂದ ಪಾಪ ಮಾಡಿ ನಂತರ ಪಶ್ಚಾತ್ತಾಪಪಟ್ಟು ಸ್ವಯಂ ಸುಧಾರಿಸಿಕೊಳ್ಳುತ್ತಾರೋ—ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು ಅದರ ಬಳಿಕವೂ ಅವರನ್ನು ಕ್ಷಮಿಸುವನು ಮತ್ತು ಅವರಿಗೆ ದಯೆ ತೋರುವನು.

ثُمَّ إِنَّ رَبَّكَ لِلَّذِينَ عَمِلُواْ ٱلسُّوٓءَ بِجَهَٰلَةٖ ثُمَّ تَابُواْ مِنۢ بَعۡدِ ذَٰلِكَ وَأَصۡلَحُوٓاْ إِنَّ رَبَّكَ مِنۢ بَعۡدِهَا لَغَفُورٞ رَّحِيمٞ ١١٩

120. ನಿಶ್ಚಯವಾಗಿಯೂ ಇಬ್ರಾಹೀಮರು ಒಬ್ಬ ಮುಖಂಡರಾಗಿದ್ದರು. ಅವರು ಅಲ್ಲಾಹನಿಗೆ ವಿಧೇಯತೆ ತೋರುವವರು ಮತ್ತು ಏಕನಿಷ್ಠರಾಗಿದ್ದರು. ಅವರು ಬಹುದೇವವಿಶ್ವಾಸಿಗಳಲ್ಲಿ ಸೇರಿದವರಾಗಿರಲಿಲ್ಲ.

إِنَّ إِبۡرَٰهِيمَ كَانَ أُمَّةٗ قَانِتٗا لِّلَّهِ حَنِيفٗا وَلَمۡ يَكُ مِنَ ٱلۡمُشۡرِكِينَ ١٢٠

121. ಅವರು ಅಲ್ಲಾಹನ ಅನುಗ್ರಹಗಳಿಗೆ ಆಭಾರಿಯಾಗಿದ್ದರು. ಅಲ್ಲಾಹು ಅವರನ್ನು ಆರಿಸಿದ್ದನು ಮತ್ತು ನೇರಮಾರ್ಗಕ್ಕೆ ಸೇರಿಸಿದ್ದನು.

شَاكِرٗا لِّأَنۡعُمِهِۚ ٱجۡتَبَىٰهُ وَهَدَىٰهُ إِلَىٰ صِرَٰطٖ مُّسۡتَقِيمٖ ١٢١

122. ನಾವು ಅವರಿಗೆ ಇಹಲೋಕದಲ್ಲೇ ಒಳಿತನ್ನು ದಯಪಾಲಿಸಿದ್ದೇವೆ. ಪರಲೋಕದಲ್ಲಿ ಅವರು ನಿಶ್ಚಯವಾಗಿಯೂ ನೀತಿವಂತರಲ್ಲಿ ಸೇರುವರು.

وَءَاتَيۡنَٰهُ فِي ٱلدُّنۡيَا حَسَنَةٗۖ وَإِنَّهُۥ فِي ٱلۡأٓخِرَةِ لَمِنَ ٱلصَّٰلِحِينَ ١٢٢

123. ನಂತರ, ನಾವು ನಿಮಗೆ, “ಏಕನಿಷ್ಠರಾದ ಇಬ್ರಾಹೀಮರ ಧರ್ಮವನ್ನು ಹಿಂಬಾಲಿಸಿರಿ” ಎಂದು ದೇವವಾಣಿಯನ್ನು ನೀಡಿದೆವು. ಅವರು ಬಹುದೇವವಿಶ್ವಾಸಿಗಳಲ್ಲಿ ಸೇರಿದವರಾಗಿರಲಿಲ್ಲ.

ثُمَّ أَوۡحَيۡنَآ إِلَيۡكَ أَنِ ٱتَّبِعۡ مِلَّةَ إِبۡرَٰهِيمَ حَنِيفٗاۖ وَمَا كَانَ مِنَ ٱلۡمُشۡرِكِينَ ١٢٣

124. ಸಬ್ಬತ್‌ನ ವಿಷಯದಲ್ಲಿ ಭಿನ್ನಮತ ತಳೆದವರ ಮೇಲೆಯೇ ಅದನ್ನು ಗೌರವಿಸಬೇಕೆಂದು ನಾವು ವಿಧಿಸಿದೆವು. ಅವರು ಯಾವ ವಿಷಯದಲ್ಲಿ ಭಿನ್ನಮತ ತಳೆದರೋ ಆ ವಿಷಯದಲ್ಲಿ ನಿಮ್ಮ ಪರಿಪಾಲಕನು (ಅಲ್ಲಾಹು) ಪುನರುತ್ಥಾನ ದಿನದಂದು ಅವರ ಮಧ್ಯೆ ಖಂಡಿತ ತೀರ್ಪು ನೀಡುವನು.

إِنَّمَا جُعِلَ ٱلسَّبۡتُ عَلَى ٱلَّذِينَ ٱخۡتَلَفُواْ فِيهِۚ وَإِنَّ رَبَّكَ لَيَحۡكُمُ بَيۡنَهُمۡ يَوۡمَ ٱلۡقِيَٰمَةِ فِيمَا كَانُواْ فِيهِ يَخۡتَلِفُونَ ١٢٤

125. ವಿವೇಚನೆ ಮತ್ತು ಅತ್ಯುತ್ತಮ ಉಪದೇಶದ ಮೂಲಕ

ٱدۡعُ إِلَىٰ سَبِيلِ رَبِّكَ بِٱلۡحِكۡمَةِ وَٱلۡمَوۡعِظَةِ

[1] ನೋಡಿ 6:146

ٱلْحَسَنَةِ ۖ وَجَٰدِلْهُم بِٱلَّتِى هِىَ أَحْسَنُ ۚ إِنَّ رَبَّكَ هُوَ أَعْلَمُ بِمَن ضَلَّ عَن سَبِيلِهِۦ ۖ وَهُوَ أَعْلَمُ بِٱلْمُهْتَدِينَ ﴿١٢٥﴾

ನಿಮ್ಮ ಪರಿಪಾಲಕನ (ಅಲ್ಲಾಹನ) ಮಾರ್ಗಕ್ಕೆ ಜನರನ್ನು ಕರೆಯಿರಿ. ಅವರೊಡನೆ ಅತ್ಯುತ್ತಮ ರೀತಿಯಲ್ಲಿ ತರ್ಕಿಸಿರಿ. ತನ್ನ ಮಾರ್ಗದಿಂದ ತಪ್ಪಿಹೋದವರು ಯಾರೆಂದು ನಿಮ್ಮ ಪರಿಪಾಲಕನಿಗೆ (ಅಲ್ಲಾಹನಿಗೆ) ಬಹಳ ಚೆನ್ನಾಗಿ ತಿಳಿದಿದೆ. ಸನ್ಮಾ-ರ್ಗದಲ್ಲಿರುವವರು ಯಾರೆಂದೂ ಅವನಿಗೆ ಬಹಳ ಚೆನ್ನಾಗಿ ತಿಳಿದಿದೆ.

---

وَإِنْ عَاقَبْتُمْ فَعَاقِبُوا۟ بِمِثْلِ مَا عُوقِبْتُم بِهِۦ ۖ وَلَئِن صَبَرْتُمْ لَهُوَ خَيْرٌ لِّلصَّٰبِرِينَ ﴿١٢٦﴾

126. ನೀವು ಪ್ರತೀಕಾರ ಪಡೆಯುವುದಾದರೆ ನಿಮ್ಮ ವಿರುದ್ಧ (ವೈರಿಗಳಿಂದ) ಎಷ್ಟು ಅತಿರೇಕ ನಡೆದಿದೆಯೋ ಅಷ್ಟೇ ಪ್ರತೀಕಾರ ಪಡೆಯಿರಿ. ನೀವು ತಾಳ್ಮೆ ತೋರುವುದಾದರೆ, ತಾಳ್ಮೆಯುಳ್ಳವರಿಗೆ ಖಂಡಿತವಾಗಿಯೂ ಅದೇ ಅತ್ಯುತ್ತಮವಾಗಿದೆ.

---

وَٱصْبِرْ وَمَا صَبْرُكَ إِلَّا بِٱللَّهِ ۚ وَلَا تَحْزَنْ عَلَيْهِمْ وَلَا تَكُ فِى ضَيْقٍ مِّمَّا يَمْكُرُونَ ﴿١٢٧﴾

127. (ಪ್ರವಾದಿಯವರೇ) ತಾಳ್ಮೆ ತೋರಿರಿ. ಅಲ್ಲಾಹನ ಕೃಪೆಯಿಂದಲೇ ನೀವು ತಾಳ್ಮೆ ತೋರುತ್ತೀರಿ. ಅವರ ಬಗ್ಗೆ ನೊಂದುಕೊಳ್ಳಬೇಡಿ. ಅವರು ಮಾಡುವ ಪಿತೂರಿಗಳನ್ನು ನೋಡಿ ಸಂಕಟಪಡಬೇಡಿ.

---

إِنَّ ٱللَّهَ مَعَ ٱلَّذِينَ ٱتَّقَوا۟ وَّٱلَّذِينَ هُم مُّحْسِنُونَ ﴿١٢٨﴾

128. ನಿಶ್ಚಯವಾಗಿಯೂ ಅಲ್ಲಾಹು ದೇವಭಯವುಳ್ಳವರೊಡನೆ ಮತ್ತು ನೀತಿವಂತರೊಡನೆ ಇದ್ದಾನೆ.

# 17. ಅಲ್-ಇಸ್ರಾಅ್

بِسْمِ ٱللَّهِ ٱلرَّحْمَٰنِ ٱلرَّحِيمِ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

---

سُبْحَٰنَ ٱلَّذِىٓ أَسْرَىٰ بِعَبْدِهِۦ لَيْلًا مِّنَ ٱلْمَسْجِدِ ٱلْحَرَامِ إِلَى ٱلْمَسْجِدِ ٱلْأَقْصَا ٱلَّذِى بَٰرَكْنَا حَوْلَهُۥ لِنُرِيَهُۥ مِنْ ءَايَٰتِنَآ ۚ إِنَّهُۥ هُوَ ٱلسَّمِيعُ ٱلْبَصِيرُ ﴿١﴾

1. ತನ್ನ ದಾಸನನ್ನು (ಪ್ರವಾದಿಯನ್ನು) ಒಂದೇ ರಾತ್ರಿಯಲ್ಲಿ ಮಸ್ಜಿದ್ ಹರಾಮ್‌ನಿಂದ (ಮಕ್ಕಾ) ಮಸ್ಜಿದ್ ಅಕ್ಸಾಗೆ (ಜೆರೂಸಲೇಂ) ನಿಶಾಯಾನ ಮಾಡಿಸಿದವನು ಪರಮ ಪರಿಶುದ್ಧನು. ಅದರ (ಮಸ್ಜಿದ್ ಅಕ್ಸಾದ) ಪರಿಸರವನ್ನು ನಾವು ಸಮೃದ್ಧಗೊಳಿಸಿ-ದ್ದೇವೆ. ಇದು ಅವರಿಗೆ ನಮ್ಮ ಕೆಲವು ದೃಷ್ಟಾಂತಗಳನ್ನು ತೋರಿ-ಸಿಕೊಡುವುದಕ್ಕಾಗಿ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ನೋಡುವವನಾಗಿದ್ದಾನೆ.[1]

---

وَءَاتَيْنَا مُوسَى ٱلْكِتَٰبَ وَجَعَلْنَٰهُ هُدًى لِّبَنِىٓ إِسْرَٰٓءِيلَ أَلَّا تَتَّخِذُوا۟ مِن دُونِى وَكِيلًا ﴿٢﴾

2. ನಾವು ಮೂಸಾರಿಗೆ ಗ್ರಂಥವನ್ನು ನೀಡಿದೆವು. ಅದನ್ನು ನಾವು ಇಸ್ರಾಯೇಲ್ ಮಕ್ಕಳಿಗೆ ಸನ್ಮಾರ್ಗದರ್ಶಿಯಾಗಿ ಮಾಡಿದೆವು.

---

[1] ಅಲ್ಲಾಹು ಪ್ರವಾದಿ ಮುಹಮ್ಮದರನ್ನು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಒಂದೇ ರಾತ್ರಿಯಲ್ಲಿ ಮಕ್ಕಾದಿಂದ ಪ್ಯಾ-ಲಸ್ತೀನ್‌ನಲ್ಲಿರುವ ಮಸ್ಜಿದುಲ್ ಅಕ್ಸಾ (ಬೈತುಲ್ ಮುಕದ್ದಿಸ್)ಗೆ, ನಂತರ ಅಲ್ಲಿಂದ ಆಕಾಶಗಳಿಗೆ ಒಯ್ದು, ಬಳಿಕ ಮಕ್ಕಾಗೆ ಮರಳಿಸಿದನು. ಇದೊಂದು ಅಸಾಮಾನ್ಯ ಘಟನೆಯಾಗಿತ್ತು. ಮಸ್ಜಿದುಲ್ ಅಕ್ಸಾದ ವರೆಗಿನ ನಿಶಾಯಾತ್ರೆಯನ್ನು ‘ಇಸ್ರಾ’ ಮತ್ತು ನಂತರ ಜರುಗಿದ ಆಕಾಶಾ-ರೋಹಣವನ್ನು ‘ಮಿಅರಾಜ್’ ಎಂದು ಕರೆಯಲಾಗುತ್ತದೆ.

"ನನ್ನನ್ನು ಬಿಟ್ಟು ಬೇರೆ ಯಾರನ್ನೂ ನೀವು ಕಾರ್ಯನಿರ್ವಾಹಕರನ್ನಾಗಿ ಸ್ವೀಕರಿಸಬೇಡಿ" ಎಂದು (ಅದರಲ್ಲಿ ಆದೇಶಿಸಲಾಗಿತ್ತು).

---

3. ನಾವು ನೂಹರೊಡನೆ ನಾವೆಯಲ್ಲಿ ಒಯ್ದವರ ಸಂತತಿಗಳೇ! ನಿಶ್ಚಯವಾಗಿಯೂ ಅವರು (ನೂಹ್) ಅತ್ಯಂತ ಕೃತಜ್ಞ ದಾಸರಾಗಿದ್ದರು.

ذُرِّيَّةَ مَنْ حَمَلْنَا مَعَ نُوحٍۚ إِنَّهُۥ كَانَ عَبْدًا
شَكُورًا ٣

---

4. ನಾವು ಗ್ರಂಥದಲ್ಲಿ ಇಸ್ರಾಯೇಲ್ ಮಕ್ಕಳಿಗೆ, "ನೀವು ಖಂಡಿತ ಭೂಮಿಯಲ್ಲಿ ಎರಡು ಬಾರಿ ಕಿಡಿಗೇಡಿತನ ಮಾಡುತ್ತೀರಿ ಮತ್ತು ಅತ್ಯಧಿಕ ದರ್ಪದಿಂದ ಮೆರೆಯುತ್ತೀರಿ" ಎಂದು ತೀರ್ಪು ನೀಡಿದೆವು.

وَقَضَيْنَآ إِلَىٰ بَنِيٓ إِسْرَٰٓءِيلَ فِي ٱلْكِتَٰبِ
لَتُفْسِدُنَّ فِي ٱلْأَرْضِ مَرَّتَيْنِ وَلَتَعْلُنَّ عُلُوًّا
كَبِيرًا ٤

---

5. ಆ ಎರಡು ವಾಗ್ದಾನಗಳಲ್ಲಿ ಮೊದಲನೆಯ ವಾಗ್ದಾನದ ಸಮಯವು ಬಂದಾಗ, ನಾವು ನಿಮ್ಮ ವಿರುದ್ಧ ಮಹಾಶೂರರಾದ ನಮ್ಮ ದಾಸರನ್ನು ಕಳುಹಿಸಿದೆವು. ಅವರು ನಿಮ್ಮನ್ನು ಮನೆ ಮನೆಗಳಲ್ಲಿ ಹುಡುಕಿದರು. ಅಲ್ಲಾಹನ ಈ ವಾಗ್ದಾನವು ನೆರವೇರುವಂತದ್ದೇ ಆಗಿದೆ.[1]

فَإِذَا جَآءَ وَعْدُ أُولَىٰهُمَا بَعَثْنَا عَلَيْكُمْ عِبَادًا
لَّنَآ أُوْلِي بَأْسٍ شَدِيدٍ فَجَاسُواْ خِلَٰلَ ٱلدِّيَارِۚ
وَكَانَ وَعْدًا مَّفْعُولًا ٥

---

6. ನಂತರ ನಾವು ನಿಮಗೆ ಅವರ ವಿರುದ್ಧ ವಿಜಯವನ್ನು ಮರಳಿಸಿದೆವು. ಸಂಪತ್ತು ಮತ್ತು ಸಂತಾನಗಳ ಮೂಲಕ ನಿಮಗೆ ಬಲವನ್ನು ನೀಡಿದೆವು. ನಿಮ್ಮನ್ನು ಅತ್ಯಧಿಕ ಜನಬಲವುಳ್ಳವರನ್ನಾಗಿ ಮಾಡಿದೆವು.

ثُمَّ رَدَدْنَا لَكُمُ ٱلْكَرَّةَ عَلَيْهِمْ وَأَمْدَدْنَٰكُم
بِأَمْوَٰلٍ وَبَنِينَ وَجَعَلْنَٰكُمْ أَكْثَرَ نَفِيرًا ٦

---

7. ನೀವು ಒಳಿತು ಮಾಡಿದರೆ ಅದು ನಿಮ್ಮ ಒಳಿತಿಗೇ ಆಗಿದೆ. ನೀವು ಕೆಡುಕು ಮಾಡಿದರೆ ಅದರ ಪರಿಣಾಮವನ್ನು ನೀವೇ ಅನುಭವಿಸುತ್ತೀರಿ. ಎರಡನೇ ವಾಗ್ದಾನದ ಸಮಯವು ಬಂದಾಗ, ನಿಮ್ಮ ಮುಖಗಳನ್ನು ವಿರೂಪಗೊಳಿಸಲು ಮತ್ತು ಅವರು ಪ್ರಥಮ ಬಾರಿ ಮಸೀದಿಯನ್ನು ಪ್ರವೇಶಿಸಿದಂತೆ ಎರಡನೇ ಬಾರಿಯೂ ಪ್ರವೇಶಿಸಲು ಹಾಗೂ ನಿಮ್ಮ ಅಧಿಕಾರದಲ್ಲಿರುವ ಎಲ್ಲವನ್ನೂ ಸರ್ವನಾಶ ಮಾಡಲು (ನಾವು ನಮ್ಮ ಬೇರೆ ದಾಸರನ್ನು ಕಳುಹಿಸಿದೆವು).[2]

إِنْ أَحْسَنتُمْ أَحْسَنتُمْ لِأَنفُسِكُمْۖ وَإِنْ أَسَأْتُمْ
فَلَهَاۚ فَإِذَا جَآءَ وَعْدُ ٱلْأٓخِرَةِ لِيَسُـُٔواْ وُجُوهَكُمْ
وَلِيَدْخُلُواْ ٱلْمَسْجِدَ كَمَا دَخَلُوهُ أَوَّلَ مَرَّةٖ
وَلِيُتَبِّرُواْ مَا عَلَوْاْ تَتْبِيرًا ٧

---

[1] ಕ್ರಿ.ಪೂ. 600 ರಲ್ಲಿ ಬಾಬಿಲೋನಿಯಾದ ಚಕ್ರವರ್ತಿ ಬುಖ್ತ್ ನಸರ್ (ನೆಬೂಕಡ್‌ನಝ್ಝರ್) ಜೆರೂಸಲೇಂ ಮೇಲೆ ದಾಳಿ ಮಾಡಿ ಅಸಂಖ್ಯ ಯಹೂದಿಗಳನ್ನು ಕೊಂದು ಅಸಂಖ್ಯ ಜನರನ್ನು ಗುಲಾಮರನ್ನಾಗಿ ಮಾಡಿಕೊಂಡ ಕಡೆಗೆ ಇಲ್ಲಿ ಸೂಚನೆ ನೀಡಲಾಗಿದೆ. ಇದು ಯಹೂದಿಗಳು ಅಲ್ಲಾಹನ ಪ್ರವಾದಿಗಳನ್ನು ಕೊಂದು ತೌರಾತನ್ನು ಬಹಿರಂಗವಾಗಿ ಉಲ್ಲಂಘಿಸಿ ವಿಕೃತಿ ಮೆರೆದ ಸಂದರ್ಭದಲ್ಲಾಗಿತ್ತು. ಬುಖ್ತ್ ನಸರ್ ಮಾತ್ರವಲ್ಲದೆ, ಜಾಲೂತ್ (ಗೋಲಿಯತ್) ನ ಕೈಯಲ್ಲೂ ಕೂಡ ಯಹೂದಿಗಳು ಬಗೆ ಬಗೆಯ ಹಿಂಸೆಗಳನ್ನು ಅನುಭವಿಸಿದ್ದರು. ನಂತರ ತಾಲೂತ್ (ಸೌಲ್) ರ ಕಾಲದಲ್ಲಿ ಪ್ರವಾದಿ ದಾವೂದ್ (ಅವರ ಮೇಲೆ ಶಾಂತಿಯಿರಲಿ) ಜಾಲೂತನನ್ನು ಜೆರೂಸಲೇಂ ಅನ್ನು ವಶಪಡಿಸಿದರು.

[2] ಯಹೂದಿಗಳು ಪ್ರವಾದಿ ಝಕರಿಯ್ಯಾರನ್ನು (ಅವರ ಮೇಲೆ ಶಾಂತಿಯಿರಲಿ) ಕೊಂದು ನಂತರ ಈಸಾರನ್ನು (ಯೇಸು — ಅವರ ಮೇಲೆ ಶಾಂತಿಯಿರಲಿ) ಕೂಡ ಕೊಲ್ಲಲು ಸಂಚು ನಡೆಸಿದರು. ಆದರೆ ಅಲ್ಲಾಹು ಅವರ ಕೈಯಿಂದ ಈಸಾರನ್ನು (ಅವರ ಮೇಲೆ ಶಾಂತಿಯಿರಲಿ)

8. ನಿಮ್ಮ ಪರಿಪಾಲಕನು (ಅಲ್ಲಾಹು) ನಿಮಗೆ ದಯೆ ತೋರಲೂಬಹುದು. ನೀವು ಅದನ್ನೇ ಪುನರಾವರ್ತಿಸಿದರೆ ನಾವು ಕೂಡ ಪುನರಾವರ್ತಿಸುವೆವು. ನಾವು ಸತ್ಯನಿಷೇಧಿಗಳಿಗೆ ನರಕಾಗ್ನಿಯನ್ನು ಕಾರಾಗೃಹವನ್ನಾಗಿ ಮಾಡಿದ್ದೇವೆ.

عَسَىٰ رَبُّكُمۡ أَن يَرۡحَمَكُمۡۚ وَإِنۡ عُدتُّمۡ عُدۡنَاۚ وَجَعَلۡنَا جَهَنَّمَ لِلۡكَٰفِرِينَ حَصِيرًا ٨

9. ನಿಶ್ಚಯವಾಗಿಯೂ, ಈ ಕುರ್‌ಆನ್ ಅತ್ಯಂತ ನೇರವಾದ ಮಾರ್ಗವನ್ನು ತೋರಿಸುತ್ತದೆ ಮತ್ತು ಸತ್ಕರ್ಮಗಳನ್ನು ಮಾಡುವ ಸತ್ಯವಿಶ್ವಾಸಿಗಳಿಗೆ ಮಹಾ ಪ್ರತಿಫಲವಿದೆಯೆಂಬ ಸುವಾರ್ತೆಯನ್ನು ನೀಡುತ್ತದೆ.

إِنَّ هَٰذَا ٱلۡقُرۡءَانَ يَهۡدِي لِلَّتِي هِيَ أَقۡوَمُ وَيُبَشِّرُ ٱلۡمُؤۡمِنِينَ ٱلَّذِينَ يَعۡمَلُونَ ٱلصَّٰلِحَٰتِ أَنَّ لَهُمۡ أَجۡرٗا كَبِيرٗا ٩

10. ಪರಲೋಕದಲ್ಲಿ ವಿಶ್ವಾಸವಿಡದವರು ಯಾರೋ—ಅವರಿಗೆ ನಾವು ಯಾತನಾಮಯ ಶಿಕ್ಷೆಯನ್ನು ಸಿದ್ಧಗೊಳಿಸಿದ್ದೇವೆ.

وَأَنَّ ٱلَّذِينَ لَا يُؤۡمِنُونَ بِٱلۡأٓخِرَةِ أَعۡتَدۡنَا لَهُمۡ عَذَابًا أَلِيمٗا ١٠

11. ಮಾನವನು ಒಳಿತಿಗಾಗಿ ಪ್ರಾರ್ಥಿಸುವಂತೆಯೇ ಕೆಡುಕಿಗಾಗಿಯೂ ಪ್ರಾರ್ಥಿಸುತ್ತಾನೆ. ಮಾನವನು ಬಹಳ ಆತುರ ಜೀವಿಯಾಗಿದ್ದಾನೆ.

وَيَدۡعُ ٱلۡإِنسَٰنُ بِٱلشَّرِّ دُعَآءَهُۥ بِٱلۡخَيۡرِۖ وَكَانَ ٱلۡإِنسَٰنُ عَجُولٗا ١١

12. ನಾವು ರಾತ್ರಿ ಮತ್ತು ಹಗಲನ್ನು ಎರಡು ದೃಷ್ಟಾಂತಗಳಾಗಿ ಮಾಡಿದೆವು. ನಾವು ರಾತ್ರಿಯ ದೃಷ್ಟಾಂತವನ್ನು ಮಬ್ಬಾಗಿ ಮತ್ತು ಹಗಲಿನ ದೃಷ್ಟಾಂತವನ್ನು ಪ್ರಕಾಶಮಾನವಾಗಿ ಮಾಡಿದೆವು. ನೀವು ನಿಮ್ಮ ಪರಿಪಾಲಕನ (ಅಲ್ಲಾಹನ) ಔದಾರ್ಯವನ್ನು ಅರಸುವುದಕ್ಕಾಗಿ ಮತ್ತು ವರ್ಷಗಳ ಸಂಖ್ಯೆ ಹಾಗೂ ಲೆಕ್ಕವನ್ನು ತಿಳಿಯುವುದಕ್ಕಾಗಿ. ನಾವು ಎಲ್ಲಾ ವಿಷಯಗಳನ್ನೂ ಸ್ಪಷ್ಟವಾಗಿ ವಿವರಿಸಿದ್ದೇವೆ.

وَجَعَلۡنَا ٱلَّيۡلَ وَٱلنَّهَارَ ءَايَتَيۡنِۖ فَمَحَوۡنَآ ءَايَةَ ٱلَّيۡلِ وَجَعَلۡنَآ ءَايَةَ ٱلنَّهَارِ مُبۡصِرَةٗ لِّتَبۡتَغُواْ فَضۡلٗا مِّن رَّبِّكُمۡ وَلِتَعۡلَمُواْ عَدَدَ ٱلسِّنِينَ وَٱلۡحِسَابَۚ وَكُلَّ شَيۡءٖ فَصَّلۡنَٰهُ تَفۡصِيلٗا ١٢

13. ನಾವು ಪ್ರತಿಯೊಬ್ಬ ವ್ಯಕ್ತಿಯ ಶುಭ-ಅಶುಭವನ್ನು ಅವನ ಕೊರಳಿನಲ್ಲಿಯೇ ಬಂಧಿಸಿದ್ದೇವೆ. ಪುನರುತ್ಥಾನ ದಿನದಂದು ನಾವು ಅವನ ಮುಂದೆ ಅವನ ಕರ್ಮಪುಸ್ತಕವನ್ನು ಹಾಜರುಪಡಿಸುವೆವು. ಅವನು ಅದನ್ನು ತೆರೆದಿಟ್ಟ ಸ್ಥಿತಿಯಲ್ಲಿ ಕಾಣುವನು.

وَكُلَّ إِنسَٰنٍ أَلۡزَمۡنَٰهُ طَٰٓئِرَهُۥ فِي عُنُقِهِۦۖ وَنُخۡرِجُ لَهُۥ يَوۡمَ ٱلۡقِيَٰمَةِ كِتَٰبٗا يَلۡقَىٰهُ مَنشُورًا ١٣

14. “ತಗೋ! ನಿನ್ನ ಪುಸ್ತಕವನ್ನು ಓದು! ಇವತ್ತು ನಿನ್ನನ್ನು ವಿಚಾರಣೆ ಮಾಡಲು ನೀನೇ ಸಾಕು!” (ಎಂದು ಅವನೊಡನೆ ಹೇಳಲಾಗುವುದು).

ٱقۡرَأۡ كِتَٰبَكَ كَفَىٰ بِنَفۡسِكَ ٱلۡيَوۡمَ عَلَيۡكَ حَسِيبٗا ١٤

---

ರಕ್ಷಿಸಿದನು. ನಂತರ ಕ್ರಿ. ಶ. 70ರಲ್ಲಿ ಅಲ್ಲಾಹು ರೋಮನ್ ದೊರೆ ಟೈಟಸ್‌ನನ್ನು ಅವರ ವಿರುದ್ಧ ಕಳುಹಿಸಿದನು. ಅವನು ಜೆರೂಸಲೇಂಗೆ ದಾಳಿ ಮಾಡಿ ಯಹೂದಿಗಳ ಒಂದು ದೊಡ್ಡ ಸಂಖ್ಯೆಯನ್ನು ಕೊಂದು ಒಂದು ದೊಡ್ಡ ಸಂಖ್ಯೆಯನ್ನು ಖೈದಿಗಳಾಗಿ ಮಾಡಿದನು. ಅವರ ಆಸ್ತಿಗಳೆಲ್ಲವನ್ನೂ ಕೊಳ್ಳೆ ಹೊಡೆದನು. ಅವರ ಧಾರ್ಮಿಕ ಗ್ರಂಥಗಳನ್ನೆಲ್ಲಾ ಚಿಂದಿ ಮಾಡಿ ಬೈತುಲ್ ಮುಕದ್ದಸ್ ಮತ್ತು ಹೈಕಲ್ ಸುಲೈಮಾನ್ ಗಳನ್ನು ಬಲವಂತವಾಗಿ ವಶಪಡಿಸಿದನು. ಯಹೂದಿಗಳನ್ನು ಶಾಶ್ವತವಾಗಿ ಫ್ಯಾಲಸ್ತೀನ್‌ನಿಂದ ಗಡೀಪಾರು ಮಾಡಿದನು.

15. ಯಾರಾದರೂ ಸನ್ಮಾರ್ಗವನ್ನು ಸ್ವೀಕರಿಸಿದರೆ ಅವನು ಅವನ ಒಳಿತಿಗಾಗಿಯೇ ಅದನ್ನು ಸ್ವೀಕರಿಸುತ್ತಾನೆ. ಯಾರಾದರೂ ದುರ್ಮಾರ್ಗವನ್ನು ಆರಿಸಿದರೆ ಅವನು ಅವನ ಕೆಡುಕಿಗಾಗಿಯೇ ಅದನ್ನು ಆರಿಸುತ್ತಾನೆ. ಪಾಪಗಳ ಭಾರವನ್ನು ಹೊರುವವರು ಇತರರು ಮಾಡಿದ ಪಾಪಗಳ ಭಾರವನ್ನು ಹೊರುವುದಿಲ್ಲ. ಒಬ್ಬ ಸಂದೇಶವಾಹಕರನ್ನು ಕಳುಹಿಸುವ ತನಕ ನಾವು ಯಾರನ್ನೂ ಶಿಕ್ಷಿಸುವುದಿಲ್ಲ.

مَّنِ ٱهۡتَدَىٰ فَإِنَّمَا يَهۡتَدِي لِنَفۡسِهِۦۖ وَمَن ضَلَّ فَإِنَّمَا يَضِلُّ عَلَيۡهَاۚ وَلَا تَزِرُ وَازِرَةٞ وِزۡرَ أُخۡرَىٰۗ وَمَا كُنَّا مُعَذِّبِينَ حَتَّىٰ نَبۡعَثَ رَسُولٗا ۝١٥

16. ನಾವು ಒಂದು ಊರನ್ನು ನಾಶ ಮಾಡಲು ಬಯಸಿದರೆ, ಅಲ್ಲಿರುವ ಸಂಪನ್ನರಿಗೆ (ಕೆಲವು) ಆದೇಶಗಳನ್ನು ನೀಡುತ್ತೇವೆ. ಅವರು ಅಲ್ಲಿ ದುಷ್ಕೃತ್ಯಗಳನ್ನು ಮಾಡತೊಡಗುತ್ತಾರೆ. ಆಗ ಅವರ ವಿಷಯದಲ್ಲಿ ಶಿಕ್ಷೆಯ ಮಾತು ಸಾಬೀತಾಗುತ್ತದೆ. ನಂತರ ನಾವು ಅದನ್ನು ಸಂಪೂರ್ಣ ನಾಶ ಮಾಡಿ ಬಿಡುತ್ತೇವೆ.

وَإِذَآ أَرَدۡنَآ أَن نُّهۡلِكَ قَرۡيَةً أَمَرۡنَا مُتۡرَفِيهَا فَفَسَقُواْ فِيهَا فَحَقَّ عَلَيۡهَا ٱلۡقَوۡلُ فَدَمَّرۡنَٰهَا تَدۡمِيرٗا ۝١٦

17. ನೂಹರ ನಂತರ ನಾವು ಎಷ್ಟೋ ತಲೆಮಾರುಗಳನ್ನು ನಾಶ ಮಾಡಿದ್ದೇವೆ. ನಿಮ್ಮ ಪರಿಪಾಲಕನು (ಅಲ್ಲಾಹು) ಅವನ ದಾಸರು ಮಾಡುವ ಪಾಪಗಳ ಬಗ್ಗೆ ಸಾಕಷ್ಟು ಜ್ಞಾನವುಳ್ಳವನಾಗಿದ್ದಾನೆ ಮತ್ತು ಸೂಕ್ಷ್ಮವಾಗಿ ಗಮನಿಸುವವನಾಗಿದ್ದಾನೆ.

وَكَمۡ أَهۡلَكۡنَا مِنَ ٱلۡقُرُونِ مِنۢ بَعۡدِ نُوحٖۗ وَكَفَىٰ بِرَبِّكَ بِذُنُوبِ عِبَادِهِۦ خَبِيرَۢا بَصِيرٗا ۝١٧

18. ಯಾರು ಈ ತ್ವರೆಯ ಲೋಕವನ್ನು (ಇಹಲೋಕವನ್ನು) ಮಾತ್ರ ಗುರಿಯಾಗಿಟ್ಟು ಕರ್ಮವೆಸಗುತ್ತಾರೋ, ಅವರಲ್ಲಿ ನಾವು ಬಯಸುವವರಿಗೆ ನಾವು ಇಚ್ಛಿಸುವಷ್ಟನ್ನು ಇಲ್ಲಿಯೇ ತ್ವರಿತವಾಗಿ ನೀಡುವೆವು. ನಂತರ (ಪರಲೋಕದಲ್ಲಿ) ನಾವು ಅವನಿಗೆ ನರಕಾಗ್ನಿಯನ್ನು ನೀಡುವೆವು. ಅವನು ಅತ್ಯಂತ ಕೆಟ್ಟ ಸ್ಥಿತಿಯಲ್ಲಿ ಅವಮಾನದೊಂದಿಗೆ ಅದನ್ನು ಪ್ರವೇಶ ಮಾಡುವನು.

مَّن كَانَ يُرِيدُ ٱلۡعَاجِلَةَ عَجَّلۡنَا لَهُۥ فِيهَا مَا نَشَآءُ لِمَن نُّرِيدُ ثُمَّ جَعَلۡنَا لَهُۥ جَهَنَّمَ يَصۡلَىٰهَا مَذۡمُومٗا مَّدۡحُورٗا ۝١٨

19. ಯಾರು ಪರಲೋಕವನ್ನು ಗುರಿಯಾಗಿಟ್ಟು, ಸತ್ಯವಿಶ್ವಾಸಿಯಾಗಿರುವ ಸ್ಥಿತಿಯಲ್ಲಿ ಅದಕ್ಕಾಗಿ ಕರ್ಮವೆಸಗುತ್ತಾರೋ ಅಂತಹವರ ಕರ್ಮಗಳು ಶ್ಲಾಘನಾರ್ಹವಾಗಿವೆ.

وَمَنۡ أَرَادَ ٱلۡأٓخِرَةَ وَسَعَىٰ لَهَا سَعۡيَهَا وَهُوَ مُؤۡمِنٞ فَأُوْلَٰٓئِكَ كَانَ سَعۡيُهُم مَّشۡكُورٗا ۝١٩

20. ನಾವು ಅವರಿಗೂ ಇವರಿಗೂ—ಪ್ರತಿಯೊಬ್ಬರಿಗೂ ನಿಮ್ಮ ಪರಿಪಾಲಕನ (ಅಲ್ಲಾಹನ) ಕೊಡುಗೆಯಿಂದ ನೀಡುತ್ತೇವೆ. ನಿಮ್ಮ ಪರಿಪಾಲಕನ (ಅಲ್ಲಾಹನ) ಕೊಡುಗೆಯು ತಡೆಯಲ್ಪಡುವುದಿಲ್ಲ.[1]

كُلّٗا نُّمِدُّ هَٰٓؤُلَآءِ وَهَٰٓؤُلَآءِ مِنۡ عَطَآءِ رَبِّكَۚ وَمَا كَانَ عَطَآءُ رَبِّكَ مَحۡظُورًا ۝٢٠

21. ನಾವು ಅವರಲ್ಲಿ ಕೆಲವರನ್ನು ಇತರ ಕೆಲವರಿಗಿಂತ ಹೇಗೆ ಶ್ರೇಷ್ಠಗೊಳಿಸಿದ್ದೇವೆಂದು ನೋಡಿರಿ. ಪರಲೋಕವು ಸ್ಥಾನಮಾನಗಳಲ್ಲಿ

ٱنظُرۡ كَيۡفَ فَضَّلۡنَا بَعۡضَهُمۡ عَلَىٰ بَعۡضٖۚ وَلَلۡأٓخِرَةُ أَكۡبَرُ دَرَجَٰتٖ وَأَكۡبَرُ تَفۡضِيلٗا ۝٢١

[1] ಇಹಲೋಕದಲ್ಲಿ ಅಲ್ಲಾಹನ ಕೊಡುಗೆಯು ಸತ್ಯವಿಶ್ವಾಸಿಗಳಿಗೂ ಸತ್ಯನಿಷೇಧಿಗಳಿಗೂ ಸಿಗುತ್ತದೆ.

ಅತಿದೊಡ್ಡದಾಗಿದೆ ಮತ್ತು ಶ್ರೇಷ್ಠತೆಯಲ್ಲೂ ಅತಿದೊಡ್ಡದಾಗಿದೆ.

22. ಅಲ್ಲಾಹನೊಡನೆ ಬೇರೆ ದೇವರನ್ನು ಮಾಡಿಬೇಡಿ. ಹಾಗೇನಾದರೂ ಆದರೆ ನೀವು ಅವಮಾನ ಮತ್ತು ತಿರಸ್ಕಾರಕ್ಕೊಳಗಾಗಿ ಬಿಡುವಿರಿ.

لَّا تَجۡعَلۡ مَعَ ٱللَّهِ إِلَٰهًا ءَاخَرَ فَتَقۡعُدَ مَذۡمُومٗا مَّخۡذُولٗا ﴿٢٢﴾

23. ನೀವು ಅಲ್ಲಾಹನ ಹೊರತು ಬೇರೆ ಯಾರನ್ನೂ ಆರಾಧಿಸಬಾರದು ಮತ್ತು ಮಾತಾಪಿತರಿಗೆ ಒಳಿತು ಮಾಡಬೇಕು ಎಂದು ನಿಮ್ಮ ಪರಿಪಾಲಕನು (ಅಲ್ಲಾಹು) ಆದೇಶಿಸಿದ್ದಾನೆ. ಅವರಲ್ಲೊಬ್ಬರು ಅಥವಾ ಇಬ್ಬರೂ ನಿಮ್ಮ ಉಪಸ್ಥಿತಿಯಲ್ಲಿ ವೃದ್ಧಾಪ್ಯವನ್ನು ತಲುಪಿದ್ದರೆ ಅವರೊಡನೆ "ಛೇ" ಎಂದು ಹೇಳಬೇಡಿ. ಅವರನ್ನು ಗದರಿಸಬೇಡಿ. ಅವರೊಡನೆ ಗೌರವದಿಂದ ಮಾತನಾಡಿರಿ.

وَقَضَىٰ رَبُّكَ أَلَّا تَعۡبُدُوٓاْ إِلَّآ إِيَّاهُ وَبِٱلۡوَٰلِدَيۡنِ إِحۡسَٰنًاۚ إِمَّا يَبۡلُغَنَّ عِندَكَ ٱلۡكِبَرَ أَحَدُهُمَآ أَوۡ كِلَاهُمَا فَلَا تَقُل لَّهُمَآ أُفّٖ وَلَا تَنۡهَرۡهُمَا وَقُل لَّهُمَا قَوۡلٗا كَرِيمٗا ﴿٢٣﴾

24. ಅವರಿಬ್ಬರ ಮುಂದೆ ದಯೆಯಿಂದ ಕೂಡಿದ ವಿನಯದ ರೆಕ್ಕೆಯನ್ನು ತಗ್ಗಿಸಿ ನಿಲ್ಲಿರಿ. "ನನ್ನ ಪರಿಪಾಲಕನೇ! ಬಾಲ್ಯದಲ್ಲಿ ಇವರು ನನ್ನನ್ನು ಸಾಕಿ ಸಲಹಿದಂತೆ ಇವರಿಗೆ ದಯೆ ತೋರು" ಎಂದು ಪ್ರಾರ್ಥಿಸಿರಿ.

وَٱخۡفِضۡ لَهُمَا جَنَاحَ ٱلذُّلِّ مِنَ ٱلرَّحۡمَةِ وَقُل رَّبِّ ٱرۡحَمۡهُمَا كَمَا رَبَّيَانِي صَغِيرٗا ﴿٢٤﴾

25. ನಿಮ್ಮ ಮನಸ್ಸುಗಳಲ್ಲಿ ಏನಿದೆಯೆಂದು ನಿಮ್ಮ ಪರಿಪಾಲಕನು (ಅಲ್ಲಾಹು) ಬಹಳ ಚೆನ್ನಾಗಿ ತಿಳಿದಿದ್ದಾನೆ. ನೀವು ನೀತಿವಂತರಾಗಿದ್ದರೆ—ಪಶ್ಚಾತ್ತಾಪಪಟ್ಟು ಮರಳುವವರಿಗೆ ಅವನು ಅತ್ಯಧಿಕ ಕ್ಷಮಿಸುವವನಾಗಿದ್ದಾನೆ.

رَّبُّكُمۡ أَعۡلَمُ بِمَا فِي نُفُوسِكُمۡۚ إِن تَكُونُواْ صَٰلِحِينَ فَإِنَّهُۥ كَانَ لِلۡأَوَّٰبِينَ غَفُورٗا ﴿٢٥﴾

26. ಆಪ್ತಸಂಬಂಧಿಕರ, ಬಡವರ ಮತ್ತು ಪ್ರಯಾಣಿಕರ ಹಕ್ಕನ್ನು ಸಂದಾಯ ಮಾಡಿರಿ. ಅನಗತ್ಯವಾಗಿ ಖರ್ಚು ಮಾಡಬೇಡಿ.

وَءَاتِ ذَا ٱلۡقُرۡبَىٰ حَقَّهُۥ وَٱلۡمِسۡكِينَ وَٱبۡنَ ٱلسَّبِيلِ وَلَا تُبَذِّرۡ تَبۡذِيرًا ﴿٢٦﴾

27. ಅನಗತ್ಯವಾಗಿ ಖರ್ಚು ಮಾಡುವವರು ಶೈತಾನನ ಸಹೋದರರಾಗಿದ್ದಾರೆ. ಶೈತಾನನು ತನ್ನ ಪರಿಪಾಲಕನಿಗೆ (ಅಲ್ಲಾಹನಿಗೆ) ಕೃತಘ್ನನಾಗಿದ್ದಾನೆ.

إِنَّ ٱلۡمُبَذِّرِينَ كَانُوٓاْ إِخۡوَٰنَ ٱلشَّيَٰطِينِۖ وَكَانَ ٱلشَّيۡطَٰنُ لِرَبِّهِۦ كَفُورٗا ﴿٢٧﴾

28. ನೀವು ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ನಿರೀಕ್ಷಿಸುವ ದಯೆಯನ್ನು ಕಾಯುತ್ತಿರುವ ಕಾರಣ, ಅವರಿಂದ ಮುಖ ತಿರುಗಿಸಬೇಕಾಗಿ ಬಂದರೆ, ಅವರೊಡನೆ ಬಹಳ ಮೃದುವಾಗಿ ಮಾತನಾಡುತ್ತಾ ಅದನ್ನು ಮನವರಿಕೆ ಮಾಡಿಕೊಡಿ.[1]

وَإِمَّا تُعۡرِضَنَّ عَنۡهُمُ ٱبۡتِغَآءَ رَحۡمَةٖ مِّن رَّبِّكَ تَرۡجُوهَا فَقُل لَّهُمۡ قَوۡلٗا مَّيۡسُورٗا ﴿٢٨﴾

[1] ಅಂದರೆ ನೀವು ಆರ್ಥಿಕವಾಗಿ ದುರ್ಬಲರಾಗಿರುವ ಸಂದರ್ಭದಲ್ಲಿ—ಇಂತಹ ಸಂದರ್ಭಗಳಲ್ಲಿ ಎಲ್ಲರೂ ಅಲ್ಲಾಹನ ದಯೆಯನ್ನು ನಿರೀಕ್ಷಿಸುತ್ತಾರೆ—ಆಗ ನಿಮ್ಮ ಬಳಿಗೆ ಸಹಾಯ ಕೇಳಿ ಬರುವ ಸಂಬಂಧಿಕರು, ಬಡವರು ಮುಂತಾದವರಿಂದ ಮುಖ ತಿರುಗಿಸಬೇಕಾಗಿ ಬಂದರೆ, ಅಂದರೆ ಅವರಿಗೆ ನಿಮ್ಮ ಅಸಹಾಯಕತೆಯನ್ನು ತಿಳಿಸಬೇಕಾಗಿ ಬಂದರೆ, ಗಟ್ಟಿ ಸ್ವರದಲ್ಲಿ ಗದರಿಸುವ ರೀತಿಯಲ್ಲಿ ವರ್ತಿಸಬೇಡಿ. ಬದಲಿಗೆ, ಮೃದುವಾಗಿ ಮತ್ತು ಸೌಮ್ಯವಾಗಿ ಅವರಿಗೆ ನಿಮ್ಮ ಪರಿಸ್ಥಿತಿಯನ್ನು ತಿಳಿಸಿಕೊಡಿ.

| | | |
|---|---|---|
| 29. | ನೀವು ನಿಮ್ಮ ಕೈಯನ್ನು ಕೊರಳಿಗೆ ಕಟ್ಟಿದಂತೆ ಇಡಬೇಡಿ. ಅಥವಾ ಅದನ್ನು ಸಂಪೂರ್ಣವಾಗಿ ಬಿಚ್ಚಿಕೊಂಡಂತೆಯೂ ಇಡಬೇಡಿ.[1] ಹಾಗೇನಾದರೂ ಆದರೆ ನೀವು ಅವಮಾನಿತರು ಮತ್ತು ಅಸಹಾಯಕರಾಗಿ ಕೂರಬೇಕಾದೀತು. | وَلَا تَجۡعَلۡ يَدَكَ مَغۡلُولَةً إِلَىٰ عُنُقِكَ وَلَا تَبۡسُطۡهَا كُلَّ ٱلۡبَسۡطِ فَتَقۡعُدَ مَلُومٗا مَّحۡسُورًا ٢٩ |
| 30. | ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಅವನು ಇಚ್ಛಿಸುವವರಿಗೆ ಉಪಜೀವನವನ್ನು ವಿಶಾಲಗೊಳಿಸುತ್ತಾನೆ ಮತ್ತು (ಅವನು ಇಚ್ಛಿಸುವವರಿಗೆ) ಇಕ್ಕಟ್ಟುಗೊಳಿಸುತ್ತಾನೆ. ಅವನು ತನ್ನ ದಾಸರ ಬಗ್ಗೆ ಸೂಕ್ಷ್ಮವಾಗಿ ತಿಳಿದವನು ಮತ್ತು ವೀಕ್ಷಿಸುವವನಾಗಿದ್ದಾನೆ. | إِنَّ رَبَّكَ يَبۡسُطُ ٱلرِّزۡقَ لِمَن يَشَآءُ وَيَقۡدِرُۚ إِنَّهُۥ كَانَ بِعِبَادِهِۦ خَبِيرَۢا بَصِيرٗا ٣٠ |
| 31. | ಬಡತನವನ್ನು ಹೆದರಿ ನಿಮ್ಮ ಮಕ್ಕಳನ್ನು ಕೊಲ್ಲಬೇಡಿ. ನಾವೇ ಅವರಿಗೂ, ನಿಮಗೂ ಆಹಾರ ಒದಗಿಸುವವರು. ಅವರನ್ನು ಕೊಲ್ಲುವುದು ಖಂಡಿತವಾಗಿಯೂ ಮಹಾ ಅಪರಾಧವಾಗಿದೆ. | وَلَا تَقۡتُلُوٓاْ أَوۡلَٰدَكُمۡ خَشۡيَةَ إِمۡلَٰقٖۖ نَّحۡنُ نَرۡزُقُهُمۡ وَإِيَّاكُمۡۚ إِنَّ قَتۡلَهُمۡ كَانَ خِطۡـٔٗا كَبِيرٗا ٣١ |
| 32. | ನೀವು ವ್ಯಭಿಚಾರದ ಹತ್ತಿರಕ್ಕೂ ಸುಳಿಯಬೇಡಿ. ನಿಶ್ಚಯವಾಗಿಯೂ ಅದು ಅಶ್ಲೀಲ ಕೃತ್ಯ ಮತ್ತು ಕೆಟ್ಟಮಾರ್ಗವಾಗಿದೆ. | وَلَا تَقۡرَبُواْ ٱلزِّنَىٰٓۖ إِنَّهُۥ كَانَ فَٰحِشَةٗ وَسَآءَ سَبِيلٗا ٣٢ |
| 33. | ಕಾನೂನುಬದ್ಧ ರೀತಿಯಲ್ಲೇ ಹೊರತು ಅಲ್ಲಾಹು (ಕೊಲ್ಲುವುದನ್ನು) ನಿಷೇಧಿಸಿದ ಜೀವವನ್ನು ಕೊಲ್ಲಬೇಡಿ. ಯಾರಾದರೂ ಅನ್ಯಾಯವಾಗಿ ಕೊಲೆಯಾದರೆ ಅವನ ವಾರಸುದಾರರಿಗೆ ನಾವು (ಪ್ರತೀಕಾರ ಪಡೆಯುವ) ಅಧಿಕಾರವನ್ನು ನೀಡಿದ್ದೇವೆ. ಆದರೆ ಕೊಲೆ ಮಾಡುವಾಗ ಅವನು ಎಲ್ಲೆ ಮೀರಬಾರದು.[2] ನಿಶ್ಚಯವಾಗಿಯೂ ಅವನಿಗೆ ಸಹಾಯ ಮಾಡಲಾಗುವುದು. | وَلَا تَقۡتُلُواْ ٱلنَّفۡسَ ٱلَّتِي حَرَّمَ ٱللَّهُ إِلَّا بِٱلۡحَقِّۗ وَمَن قُتِلَ مَظۡلُومٗا فَقَدۡ جَعَلۡنَا لِوَلِيِّهِۦ سُلۡطَٰنٗا فَلَا يُسۡرِف فِّي ٱلۡقَتۡلِۖ إِنَّهُۥ كَانَ مَنصُورٗا ٣٣ |
| 34. | ಅನಾಥರು ಪ್ರೌಢರಾಗುವ ತನಕ ಅವರ ಆಸ್ತಿಯನ್ನು ಒಳಿತು ಮಾಡುವ ಉದ್ದೇಶದಿಂದಲ್ಲದೆ ಮುಟ್ಟಬೇಡಿ. ಕರಾರುಗಳನ್ನು ನೆರವೇರಿಸಿರಿ. ನಿಶ್ಚಯವಾಗಿಯೂ ಕರಾರಿನ ಬಗ್ಗೆ ನಿಮ್ಮೊಡನೆ ಪ್ರಶ್ನಿಸಲಾಗುವುದು. | وَلَا تَقۡرَبُواْ مَالَ ٱلۡيَتِيمِ إِلَّا بِٱلَّتِي هِيَ أَحۡسَنُ حَتَّىٰ يَبۡلُغَ أَشُدَّهُۥۚ وَأَوۡفُواْ بِٱلۡعَهۡدِۖ إِنَّ ٱلۡعَهۡدَ كَانَ مَسۡـُٔولٗا ٣٤ |
| 35. | ನೀವು ಅಳೆದುಕೊಡುವಾಗ ಪೂರ್ಣವಾಗಿ ಅಳೆದು ಕೊಡಿ ಮತ್ತು | وَأَوۡفُواْ ٱلۡكَيۡلَ إِذَا كِلۡتُمۡ وَزِنُواْ بِٱلۡقِسۡطَاسِ |

[1] ಅಂದರೆ ನೀವು ಏನೂ ಖರ್ಚು ಮಾಡದೆ ಜಿಪುಣತನ ತೋರಬೇಡಿ. ಅದೇ ರೀತಿ ಅಮಿತವಾಗಿಯೂ ಖರ್ಚು ಮಾಡಬೇಡಿ.

[2] ಕೊಲೆಯಾದವರ ಕಡೆಯವರು ಪ್ರತೀಕಾರ ಪಡೆಯುವಾಗ ಎಲ್ಲೆ ಮೀರಬಾರದು. ಅಂದರೆ ಒಬ್ಬನ ಬದಲಿಗೆ ಇಬ್ಬರು ಅಥವಾ ಅದಕ್ಕಿಂತ ಹೆಚ್ಚು ಜನರನ್ನು ಕೊಲ್ಲುವುದು, ಕೊಂದ ನಂತರ ಅಂಗಾಂಗಗಳನ್ನು ಬೇರ್ಪಡಿಸುವುದು, ಕ್ರೂರವಾಗಿ ಮತ್ತು ಬರ್ಬರವಾಗಿ ಕೊಲ್ಲುವುದು ಇತ್ಯಾದಿ ಮಾಡಬಾರದು.

| | |
|---|---|
| ٱلْمُسْتَقِيمِ ذَٰلِكَ خَيْرٌ وَأَحْسَنُ تَأْوِيلًا ﴿٣٥﴾ | ಸರಿಯಾದ ತಕ್ಕಡಿಯಿಂದ ತೂಕ ಮಾಡಿ. ಅದು ಅತ್ಯುತ್ತಮ ಮಾರ್ಗವಾಗಿದ್ದು ಅತ್ಯುತ್ತಮ ಪರಿಣಾಮವನ್ನು ಹೊಂದಿದೆ. |
| وَلَا تَقْفُ مَا لَيْسَ لَكَ بِهِۦ عِلْمٌ إِنَّ ٱلسَّمْعَ وَٱلْبَصَرَ وَٱلْفُؤَادَ كُلُّ أُو۟لَٰٓئِكَ كَانَ عَنْهُ مَسْـُٔولًا ﴿٣٦﴾ | 36. ನಿಮಗೆ ಅರಿವಿಲ್ಲದ ಯಾವುದನ್ನೂ ಹಿಂಬಾಲಿಸಬೇಡಿ. ನಿಶ್ಚಯವಾಗಿಯೂ ಕಿವಿ, ಕಣ್ಣು ಮತ್ತು ಹೃದಯಗಳೆಲ್ಲವೂ ವಿಚಾರಣೆಗೆ ಒಳಪಡುತ್ತವೆ. |
| وَلَا تَمْشِ فِى ٱلْأَرْضِ مَرَحًا إِنَّكَ لَن تَخْرِقَ ٱلْأَرْضَ وَلَن تَبْلُغَ ٱلْجِبَالَ طُولًا ﴿٣٧﴾ | 37. ಭೂಮಿಯಲ್ಲಿ ದರ್ಪದಿಂದ ನಡೆಯಬೇಡಿ. ಭೂಮಿಯನ್ನು ಸೀಳಲು ಅಥವಾ ಎತ್ತರದಲ್ಲಿ ಪರ್ವತವನ್ನು ತಲುಪಲು ನಿಮಗೆ ಖಂಡಿತ ಸಾಧ್ಯವಿಲ್ಲ. |
| كُلُّ ذَٰلِكَ كَانَ سَيِّئُهُۥ عِندَ رَبِّكَ مَكْرُوهًا ﴿٣٨﴾ | 38. ಇವೆಲ್ಲಾ ಕರ್ಮಗಳ ಕೆಡುಕುಗಳು ನಿಮ್ಮ ಪರಿಪಾಲಕನ (ಅಲ್ಲಾಹನ) ದೃಷ್ಟಿಯಲ್ಲಿ ಅನಿಷ್ಟಕರವಾಗಿವೆ. |
| ذَٰلِكَ مِمَّآ أَوْحَىٰٓ إِلَيْكَ رَبُّكَ مِنَ ٱلْحِكْمَةِ وَلَا تَجْعَلْ مَعَ ٱللَّهِ إِلَٰهًا ءَاخَرَ فَتُلْقَىٰ فِى جَهَنَّمَ مَلُومًا مَّدْحُورًا ﴿٣٩﴾ | 39. ಇವೆಲ್ಲವೂ ನಿಮ್ಮ ಪರಿಪಾಲಕನು (ಅಲ್ಲಾಹು) ನಿಮಗೆ ವಿವೇಕದೊಂದಿಗೆ ಅವತೀರ್ಣಗೊಳಿಸಿದ ದೇವವಾಣಿಯಲ್ಲಿ ಸೇರಿದ್ದಾಗಿವೆ. ಅಲ್ಲಾಹನೊಂದಿಗೆ ಬೇರೆ ದೇವರುಗಳನ್ನು ಮಾಡಬೇಡಿ. ಹಾಗೇನಾದರೂ ಆದರೆ ಆಕ್ಷೇಪಾರ್ಹ ಮತ್ತು ಬಹಿಷ್ಕೃತ ಸ್ಥಿತಿಯಲ್ಲಿ ನಿಮ್ಮನ್ನು ನರಕಕ್ಕೆ ಎಸೆಯಲಾಗುವುದು. |
| أَفَأَصْفَىٰكُمْ رَبُّكُم بِٱلْبَنِينَ وَٱتَّخَذَ مِنَ ٱلْمَلَٰٓئِكَةِ إِنَٰثًا إِنَّكُمْ لَتَقُولُونَ قَوْلًا عَظِيمًا ﴿٤٠﴾ | 40. ನಿಮ್ಮ ಪರಿಪಾಲಕನು (ಅಲ್ಲಾಹು) ನಿಮಗೆ ಗಂಡುಮಕ್ಕಳನ್ನು ಆಯ್ಕೆ ಮಾಡಿ, ತನಗೋಸ್ಕರ ದೇವದೂತರುಗಳನ್ನು ಹೆಣ್ಣುಮಕ್ಕಳಾಗಿ ಸ್ವೀಕರಿಸಿಕೊಂಡನೇ? ನಿಜಕ್ಕೂ ನೀವು ಬಹಳ ಗಂಭೀರ ಮಾತನ್ನು ಹೇಳುತ್ತಿದ್ದೀರಿ. |
| وَلَقَدْ صَرَّفْنَا فِى هَٰذَا ٱلْقُرْءَانِ لِيَذَّكَّرُوا۟ وَمَا يَزِيدُهُمْ إِلَّا نُفُورًا ﴿٤١﴾ | 41. ನಾವು ಈ ಕುರ್‌ಆನ್‌ನಲ್ಲಿ (ಎಲ್ಲವನ್ನೂ) ನಾನಾ ವಿಧಗಳಲ್ಲಿ ವಿವರಿಸಿದ್ದೇವೆ. ಅವರು ಉಪದೇಶ ಸ್ವೀಕರಿಸುವುದಕ್ಕಾಗಿ. ಆದರೆ ಅದು ಅವರಿಗೆ ದ್ವೇಷವನ್ನು ಮಾತ್ರ ಹೆಚ್ಚಿಸುತ್ತಿದೆ. |
| قُل لَّوْ كَانَ مَعَهُۥٓ ءَالِهَةٌ كَمَا يَقُولُونَ إِذًا لَّٱبْتَغَوْا۟ إِلَىٰ ذِى ٱلْعَرْشِ سَبِيلًا ﴿٤٢﴾ | 42. ಹೇಳಿರಿ: "ಅವರು ಹೇಳುವಂತೆ ಅಲ್ಲಾಹನ ಜೊತೆಗೆ ಬೇರೆ ದೇವರುಗಳು ಇರುತ್ತಿದ್ದರೆ, ಅವರು ಖಂಡಿತವಾಗಿಯೂ ಸಿಂಹಾಸನದ ಒಡೆಯನ (ಅಲ್ಲಾಹನ) ಕಡೆಗೆ ಒಂದು ದಾರಿಯನ್ನು ಹುಡುಕುತ್ತಿದ್ದರು."[1] |
| سُبْحَٰنَهُۥ وَتَعَٰلَىٰ عَمَّا يَقُولُونَ عُلُوًّا كَبِيرًا ﴿٤٣﴾ | 43. ಅಲ್ಲಾಹು ಪರಿಶುದ್ಧನು; ಅವರು ಏನು ಹೇಳುತ್ತಾರೋ ಅದಕ್ಕಿಂತ ಅವನು ಎಷ್ಟೋ ವಿದೂರನು ಮತ್ತು ಪರಮೋನ್ನತನಾಗಿದ್ದಾನೆ. |

[1] ಬಹುದೇವಾರಾಧಕರು ಹೇಳುವಂತೆ ಅಲ್ಲಾಹನೊಂದಿಗೆ ಬೇರೆ ದೇವರುಗಳು ಇರುತ್ತಿದ್ದರೆ ಅವರು ಅಲ್ಲಾಹನ ವಿರುದ್ಧ ಹೋರಾಡಿ ಅಧಿಕಾರ ವಶಪಡಿಸುವ ಮಾರ್ಗವನ್ನು ಹುಡುಕುತ್ತಿದ್ದರು. ಹಾಗೇನಾದರೂ ಸಂಭವಿಸುತ್ತಿದ್ದರೆ ವಿಶ್ವವು ಅಲ್ಲೋಲ ಕಲ್ಲೋಲವಾಗುತ್ತಿತ್ತು. ಆದರೆ ಈ ತನಕ ಹಾಗೇನೂ ಸಂಭವಿಸಿಲ್ಲ. ಆದ್ದರಿಂದ ಅಲ್ಲಾಹನ ಹೊರತು ಬೇರೆ ದೇವರಿಲ್ಲ ಎಂಬುದಕ್ಕೆ ಇದು ಸ್ಪಷ್ಟ ಸಾಕ್ಷ್ಯವಾಗಿದೆ.

44. ಏಳಾಕಾಶಗಳು, ಭೂಮಿ ಮತ್ತು ಅವುಗಳಲ್ಲಿರುವ ಎಲ್ಲರೂ ಅವನ ಪರಿಶುದ್ಧತೆಯನ್ನು ಕೊಂಡಾಡುತ್ತಾರೆ. ಅವನ ಸ್ತುತಿಸುತ್ತಾ ಅವನ ಪರಿಶುದ್ಧತೆಯನ್ನು ಕೊಂಡಾಡದಿರುವ ಯಾವುದೇ ವಸ್ತುವಿಲ್ಲ. ಆದರೆ ನಿಮಗೆ ಅವರ ಸ್ತುತಿಕೀರ್ತನೆಗಳನ್ನು ಅರ್ಥ-ಮಾಡಿಕೊಳ್ಳಲಾಗುವುದಿಲ್ಲ. ನಿಶ್ಚಯವಾಗಿಯೂ ಅವನು ಸಹಿಷ್ಣು-ತೆಯುಳ್ಳವನು ಮತ್ತು ಕ್ಷಮಿಸುವವನಾಗಿದ್ದಾನೆ.

تُسَبِّحُ لَهُ ٱلسَّمَٰوَٰتُ ٱلسَّبۡعُ وَٱلۡأَرۡضُ وَمَن فِيهِنَّۚ
وَإِن مِّن شَيۡءٍ إِلَّا يُسَبِّحُ بِحَمۡدِهِۦ وَلَٰكِن
لَّا تَفۡقَهُونَ تَسۡبِيحَهُمۡۚ إِنَّهُۥ كَانَ حَلِيمًا
غَفُورٗا ﴿٤٤﴾

45. ನೀವು ಕುರ್‌ಆನ್ ಪಠಿಸುವಾಗ ನಾವು ನಿಮ್ಮ ಮತ್ತು ಪರಲೋಕದಲ್ಲಿ ವಿಶ್ವಾಸವಿಡದ ಆ ಜನರ ನಡುವೆ ಒಂದು ರಹಸ್ಯ ಪರದೆಯನ್ನು ಇಡುತ್ತೇವೆ.

وَإِذَا قَرَأۡتَ ٱلۡقُرۡءَانَ جَعَلۡنَا بَيۡنَكَ وَبَيۡنَ ٱلَّذِينَ
لَا يُؤۡمِنُونَ بِٱلۡأٓخِرَةِ حِجَابٗا مَّسۡتُورٗا ﴿٤٥﴾

46. ಅವರು ಅದನ್ನು ಅರ್ಥಮಾಡಿಕೊಳ್ಳದಂತೆ ನಾವು ಅವರ ಹೃದಯಗಳ ಮೇಲೆ ಪರದೆಗಳನ್ನು ಮತ್ತು ಅವರ ಕಿವಿಗಳಿಗೆ ಭಾರಗಳನ್ನು ಇಡುತ್ತೇವೆ. ನೀವು ಕುರ್‌ಆನ್‌ನಲ್ಲಿ ನಿಮ್ಮ ಪರಿಪಾಲಕನ (ಅಲ್ಲಾಹನ) ಏಕತ್ವವನ್ನು ಉಲ್ಲೇಖಿಸಿದರೆ ಅವರು ದ್ವೇಷದಿಂದ ಬೆನ್ನು ತಿರುಗಿಸಿ ನಡೆಯುತ್ತಾರೆ.

وَجَعَلۡنَا عَلَىٰ قُلُوبِهِمۡ أَكِنَّةً أَن يَفۡقَهُوهُ وَفِيٓ
ءَاذَانِهِمۡ وَقۡرٗاۚ وَإِذَا ذَكَرۡتَ رَبَّكَ فِي ٱلۡقُرۡءَانِ
وَحۡدَهُۥ وَلَّوۡاْ عَلَىٰٓ أَدۡبَٰرِهِمۡ نُفُورٗا ﴿٤٦﴾

47. ಅವರು ಅದಕ್ಕೆ ಕಿವಿಗೊಡುವಾಗ, ಅವರು ಯಾವ ಉದ್ದೇಶದಿಂದ ಅದಕ್ಕೆ ಕಿವಿಗೊಡುತ್ತಾರೆಂದು ನಮಗೆ ಚೆನ್ನಾಗಿ ತಿಳಿದಿದೆ. ಅವರು ಸಮಾಲೋಚನೆ ಮಾಡುವ ಸಂದರ್ಭದಲ್ಲಿ ಮತ್ತು "ನೀವು ಮಾಟ ಮಾಡಲಾದ ವ್ಯಕ್ತಿಯನ್ನೇ ಅನುರಿಸುತ್ತಿದ್ದೀರಿ" ಎಂದು ಆ ಅಕ್ರಮಿಗಳು ಹೇಳುವಾಗಲೂ (ನಾವು ಅವರ ಬಗ್ಗೆ ಚೆನ್ನಾಗಿ ತಿಳಿದಿದ್ದೇವೆ).

نَّحۡنُ أَعۡلَمُ بِمَا يَسۡتَمِعُونَ بِهِۦٓ إِذۡ يَسۡتَمِعُونَ
إِلَيۡكَ وَإِذۡ هُمۡ نَجۡوَىٰٓ إِذۡ يَقُولُ ٱلظَّٰلِمُونَ إِن
تَتَّبِعُونَ إِلَّا رَجُلٗا مَّسۡحُورًا ﴿٤٧﴾

48. (ಪ್ರವಾದಿಯವರೇ!) ಅವರು ನಿಮಗೆ ಹೇಗೆ ಉದಾಹರಣೆ ಕೊಡುತ್ತಾರೆಂದು ನೋಡಿರಿ. ಅವರು ದಾರಿತಪ್ಪಿದ್ದಾರೆ. ಅವರಿಗೆ ದಾರಿ ಕಾಣಲು ಸಾಧ್ಯವಾಗುತ್ತಿಲ್ಲ.

ٱنظُرۡ كَيۡفَ ضَرَبُواْ لَكَ ٱلۡأَمۡثَالَ فَضَلُّواْ فَلَا
يَسۡتَطِيعُونَ سَبِيلٗا ﴿٤٨﴾

49. ಅವರು ಕೇಳುತ್ತಾರೆ: "ನಾವು ಮೂಳೆ ಮತ್ತು (ಮಣ್ಣಾಗಿ) ಚಿಂದಿಯಾದ ನಂತರ ನಮ್ಮನ್ನು ಹೊಸ ಸೃಷ್ಟಿಯಾಗಿ ಎಬ್ಬಿಸಲಾಗುವುದೇ?"

وَقَالُوٓاْ أَءِذَا كُنَّا عِظَٰمٗا وَرُفَٰتًا أَءِنَّا لَمَبۡعُوثُونَ
خَلۡقٗا جَدِيدٗا ﴿٤٩﴾

50. ಹೇಳಿರಿ: "ನೀವು ಕಲ್ಲುಗಳಾಗಿ ಬಿಡಿ ಅಥವಾ ಕಬ್ಬಿಣವಾಗಿ ಬಿಡಿ.

قُلۡ كُونُواْ حِجَارَةً أَوۡ حَدِيدًا ﴿٥٠﴾

51. ಅಥವಾ ನಿಮ್ಮ ಹೃದಯಗಳಲ್ಲಿ ಹಿರಿದಾಗಿ ಕಾಣುವ ಯಾವುದಾದರೂ ಸೃಷ್ಟಿಯಾಗಿ ಬಿಡಿ. (ಏನೇ ಆದರೂ ನಿಮ್ಮನ್ನು ಜೀವ ನೀಡಿ ಎಬ್ಬಿಸಲಾಗುವುದು)". ಅವರು ಕೇಳುತ್ತಾರೆ: "ನಮಗೆ ಪುನಃ ಜೀವ ನೀಡುವುದು ಯಾರು?" ಹೇಳಿರಿ: "ನಿಮ್ಮನ್ನು

أَوۡ خَلۡقٗا مِّمَّا يَكۡبُرُ فِي صُدُورِكُمۡۚ فَسَيَقُولُونَ
مَن يُعِيدُنَاۖ قُلِ ٱلَّذِي فَطَرَكُمۡ أَوَّلَ مَرَّةٖۚ
فَسَيُنۡغِضُونَ إِلَيۡكَ رُءُوسَهُمۡ وَيَقُولُونَ مَتَىٰ هُوَۖ

ಮೊದಲ ಬಾರಿ ಸೃಷ್ಟಿಸಿದವನು.” ಆಗ ಅವರು ನಿಮ್ಮ ಕಡೆಗೆ ತಲೆಯಾಡಿಸುತ್ತಾ ಕೇಳುತ್ತಾರೆ: “ಅದು ಯಾವಾಗ?” ಹೇಳಿರಿ: “ಅದು ಸಮೀಪದಲ್ಲೇ ಆಗಿರಬಹುದು.”

قُلۡ عَسَىٰٓ أَن يَكُونَ قَرِيبٗا ٥١

---

52. ಅವನು ನಿಮ್ಮನ್ನು ಕರೆಯುವ ಮತ್ತು ನೀವು ಅವನನ್ನು ಸ್ತುತಿಸುತ್ತಾ ಅವನಿಗೆ ಉತ್ತರ ನೀಡುವ ದಿನ. ನೀವು (ಇಹಲೋಕದಲ್ಲಿ) ಸ್ವಲ್ಪ ಸಮಯ ಮಾತ್ರ ವಾಸವಾಗಿದ್ದಿರಿ ಎಂದು ನಿಮಗೆ ಭಾಸವಾಗುವುದು.

يَوۡمَ يَدۡعُوكُمۡ فَتَسۡتَجِيبُونَ بِحَمۡدِهِۦ وَتَظُنُّونَ
إِن لَّبِثۡتُمۡ إِلَّا قَلِيلٗا ٥٢

---

53. ನನ್ನ ದಾಸರೊಡನೆ, ಅವರು ಅತ್ಯುತ್ತಮ ಮಾತುಗಳನ್ನೇ ಆಡಲಿ ಎಂದು ಹೇಳಿರಿ. ನಿಶ್ಚಯವಾಗಿಯೂ ಶೈತಾನನು ಅವರ ನಡುವೆ (ಸಂಘರ್ಷವನ್ನು) ಹುಟ್ಟುಹಾಕುತ್ತಾನೆ. ನಿಶ್ಚಯವಾಗಿಯೂ ಶೈತಾನನು ಮನುಷ್ಯನ ಪ್ರತ್ಯಕ್ಷ ಶತ್ರುವಾಗಿದ್ದಾನೆ.

وَقُل لِّعِبَادِي يَقُولُواْ ٱلَّتِي هِيَ أَحۡسَنُۚ إِنَّ
ٱلشَّيۡطَٰنَ يَنزَغُ بَيۡنَهُمۡۚ إِنَّ ٱلشَّيۡطَٰنَ كَانَ
لِلۡإِنسَٰنِ عَدُوّٗا مُّبِينٗا ٥٣

---

54. ನಿಮ್ಮ ಪರಿಪಾಲಕನಿಗೆ (ಅಲ್ಲಾಹನಿಗೆ) ನಿಮ್ಮ ಬಗ್ಗೆ ಚೆನ್ನಾಗಿ ತಿಳಿದಿದೆ. ಅವನು ಇಚ್ಛಿಸಿದರೆ ನಿಮಗೆ ದಯೆ ತೋರುವನು ಅಥವಾ ಅವನು ಇಚ್ಛಿಸಿದರೆ ನಿಮ್ಮನ್ನು ಶಿಕ್ಷಿಸುವನು. (ಪ್ರವಾದಿಯವರೇ) ನಾವು ನಿಮ್ಮನ್ನು ಅವರ ಮೇಲ್ವಿಚಾರಣೆ ಮಾಡಲು ಕಳುಹಿಸಿಲ್ಲ.

رَّبُّكُمۡ أَعۡلَمُ بِكُمۡۖ إِن يَشَأۡ يَرۡحَمۡكُمۡ أَوۡ
إِن يَشَأۡ يُعَذِّبۡكُمۡۚ وَمَآ أَرۡسَلۡنَٰكَ عَلَيۡهِمۡ
وَكِيلٗا ٥٤

---

55. ಭೂಮ್ಯಾಕಾಶಗಳಲ್ಲಿರುವವರ ಬಗ್ಗೆ ನಿಮ್ಮ ಪರಿಪಾಲಕನು (ಅಲ್ಲಾಹು) ಬಹಳ ಚೆನ್ನಾಗಿ ತಿಳಿದಿದ್ದಾನೆ. ನಾವು ಕೆಲವು ಪ್ರವಾದಿಗಳನ್ನು ಇತರ ಪ್ರವಾದಿಗಳಿಗಿಂತ ಶ್ರೇಷ್ಠಗೊಳಿಸಿದ್ದೇವೆ. ನಾವು ದಾವೂದರಿಗೆ ಝಬೂರ್ ನೀಡಿದ್ದೇವೆ.

وَرَبُّكَ أَعۡلَمُ بِمَن فِي ٱلسَّمَٰوَٰتِ وَٱلۡأَرۡضِۗ وَلَقَدۡ
فَضَّلۡنَا بَعۡضَ ٱلنَّبِيِّـۧنَ عَلَىٰ بَعۡضٖۖ وَءَاتَيۡنَا
دَاوُۥدَ زَبُورٗا ٥٥

---

56. ಹೇಳಿರಿ: “ನೀವು ಅಲ್ಲಾಹನನ್ನು ಬಿಟ್ಟು (ಅಲ್ಲಾಹನ ಸಹಭಾಗಿಗಳೆಂದು) ನೀವು ವಾದಿಸುತ್ತಿರುವ ನಿಮ್ಮ ದೇವರುಗಳನ್ನು ಕರೆದು ಪ್ರಾರ್ಥಿಸಿರಿ. ನಿಮ್ಮಿಂದ ಯಾವುದೇ ತೊಂದರೆಯನ್ನು ನಿವಾರಿಸಲು ಅಥವಾ ನಿಮ್ಮ ಸ್ಥಿತಿಯನ್ನು ಬದಲಾಯಿಸಲು ಅವರಿಗೆ ಸಾಧ್ಯವಿಲ್ಲ.”

قُلِ ٱدۡعُواْ ٱلَّذِينَ زَعَمۡتُم مِّن دُونِهِۦ
فَلَا يَمۡلِكُونَ كَشۡفَ ٱلضُّرِّ عَنكُمۡ
وَلَا تَحۡوِيلًا ٥٦

---

57. ಅವರು ಯಾರನ್ನು ಕರೆದು ಪ್ರಾರ್ಥಿಸುತ್ತಿದ್ದಾರೋ, ಅವರು ಅವರ ಪರಿಪಾಲಕನ (ಅಲ್ಲಾಹನ) ಬಳಿಗೆ ಹತ್ತಿರವಾಗುವ ಮಾರ್ಗಗಳನ್ನು ಹುಡುಕುತ್ತಿದ್ದಾರೆ.[1] ಅವರಲ್ಲಿ ಅಲ್ಲಾಹನಿಗೆ

أُوْلَٰٓئِكَ ٱلَّذِينَ يَدۡعُونَ يَبۡتَغُونَ إِلَىٰ رَبِّهِمُ
ٱلۡوَسِيلَةَ أَيُّهُمۡ أَقۡرَبُ وَيَرۡجُونَ رَحۡمَتَهُۥ

---

[1] ಅಂದರೆ ದೇವದೂತರುಗಳು, ಪ್ರವಾದಿಗಳು ಮತ್ತು ಮಹಾಪುರುಷರು. ಬಹುದೇವಾರಾಧಕರಲ್ಲಿ ಅನೇಕರು ದೇವದೂತರುಗಳನ್ನು ಆರಾಧಿಸುತ್ತಿದ್ದರು. ಯಹೂದಿಗಳು ಪ್ರವಾದಿ ಉಝೈರ್ (ಎಜ್ರಾ) ರನ್ನು ಮತ್ತು ಕ್ರೈಸ್ತರು ಪ್ರವಾದಿ ಈಸಾ (ಯೇಸು) ರನ್ನು ಅಲ್ಲಾಹನ ಪುತ್ರರೆಂದು ಕರೆದು ಆರಾಧಿಸುತ್ತಾರೆ. ಕೆಲವರು ಸಮಾಧಿಗಳಲ್ಲಿರುವ ಮಹಾಪುರುಷರನ್ನು ಆರಾಧಿಸುತ್ತಾರೆ. ವಾಸ್ತವವಾಗಿ ಇವರೆಲ್ಲರೂ ಅಲ್ಲಾಹನ ಇಷ್ಟ-ದಾಸರಾಗಿದ್ದಾರೆ ಮತ್ತು ಅಲ್ಲಾಹನಿಗೆ ಸಮೀಪವಾಗುವ ಮಾರ್ಗಗಳನ್ನು ಹುಡುಕುತ್ತಿದ್ದಾರೆ. ನೀವು ಅವರನ್ನು ಆರಾಧಿಸುತ್ತಿರುವ ಬಗ್ಗೆ ಅವರಿಗೆ

ಹೆಚ್ಚು ಹತ್ತಿರವಾಗುವುದು ಯಾರು ಎಂದು. ಅವರು ಅವನ ದಯೆಯನ್ನು ಆಶಿಸುತ್ತಾರೆ ಮತ್ತು ಅವನ ಶಿಕ್ಷೆಯನ್ನು ಹೆದರುತ್ತಾರೆ. ಖಂಡಿತವಾಗಿಯೂ ನಿಮ್ಮ ಪರಿಪಾಲಕನ (ಅಲ್ಲಾಹನ) ಶಿಕ್ಷೆಯು ಹೆದರಬೇಕಾದುದೇ ಆಗಿದೆ.

وَيَخَافُونَ عَذَابَهُۥٓۚ إِنَّ عَذَابَ رَبِّكَ كَانَ مَحۡذُورٗا ﴿٥٧﴾

---

58. ಎಷ್ಟೆಲ್ಲಾ ಊರುಗಳಿವೆಯೋ ಅವೆಲ್ಲವನ್ನೂ ನಾವು ಪುನರುತ್ಥಾನ ದಿನಕ್ಕಿಂತ ಮೊದಲು ನಾಶ ಮಾಡುವೆವು; ಅಥವಾ ಕಠೋರ ಶಿಕ್ಷೆ ನೀಡುವೆವು. ಇದು ಗ್ರಂಥದಲ್ಲಿ ಲಿಖಿತವಾದ ವಿಷಯವಾಗಿದೆ.

وَإِن مِّن قَرۡيَةٍ إِلَّا نَحۡنُ مُهۡلِكُوهَا قَبۡلَ يَوۡمِ ٱلۡقِيَٰمَةِ أَوۡ مُعَذِّبُوهَا عَذَابٗا شَدِيدٗاۚ كَانَ ذَٰلِكَ فِي ٱلۡكِتَٰبِ مَسۡطُورٗا ﴿٥٨﴾

---

59. ದೃಷ್ಟಾಂತಗಳನ್ನು ಕಳುಹಿಸಲು ನಮಗೆ ತಡೆಯಾಗಿರುವುದು, ಮೊದಲಿನ ಜನರು ಅವುಗಳನ್ನು ನಿಷೇಧಿಸಿದ್ದರು ಎಂಬುದು ಮಾತ್ರ. ನಾವು ಸಮೂದ್ ಗೋತ್ರಕ್ಕೆ ಅಂತರ್ದೃಷ್ಟಿಯ ರೂಪದಲ್ಲಿ ಒಂಟೆಯನ್ನು ನೀಡಿದೆವು. ಆದರೆ ಅವರು ಅದರೊಡನೆ ಅನ್ಯಾಯವೆಸಗಿದರು. ಜನರನ್ನು ಹೆದರಿಸುವುದಕ್ಕಾಗಿಯೇ ವಿನಾ ನಾವು ದೃಷ್ಟಾಂತಗಳನ್ನು ಕಳುಹಿಸುವುದಿಲ್ಲ.

وَمَا مَنَعَنَآ أَن نُّرۡسِلَ بِٱلۡأٓيَٰتِ إِلَّآ أَن كَذَّبَ بِهَا ٱلۡأَوَّلُونَۚ وَءَاتَيۡنَا ثَمُودَ ٱلنَّاقَةَ مُبۡصِرَةٗ فَظَلَمُواْ بِهَاۚ وَمَا نُرۡسِلُ بِٱلۡأٓيَٰتِ إِلَّا تَخۡوِيفٗا ﴿٥٩﴾

---

60. "ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಜನರನ್ನು ಆವರಿಸಿದ್ದಾನೆ" ಎಂದು ನಾವು ಹೇಳಿದ ಸಂದರ್ಭ(ವನ್ನು ಸ್ಮರಿಸಿ). ನಾವು ನಿಮಗೆ ತೋರಿಸಿದ ಆ ದೃಶ್ಯವನ್ನು ನಾವು ಜನರಿಗೆ ಒಂದು ಪರೀಕ್ಷೆಯನ್ನಾಗಿ ಮಾಡಿದ್ದೆವು. ಅದೇ ರೀತಿ ಕುರ್‌ಆನ್‌ನಲ್ಲಿ ಶಪಿಸಲಾದ ಆ ಮರವನ್ನು ಕೂಡ. ನಾವು ಅವರನ್ನು ಹೆದರಿಸುತ್ತೇವೆ. ಆದರೆ ಅದು ಅವರಿಗೆ ಮಹಾ ಅತಿರೇಕವನ್ನು ಮಾತ್ರ ಹೆಚ್ಚಿಸುತ್ತದೆ.[1]

وَإِذۡ قُلۡنَا لَكَ إِنَّ رَبَّكَ أَحَاطَ بِٱلنَّاسِۚ وَمَا جَعَلۡنَا ٱلرُّءۡيَا ٱلَّتِيٓ أَرَيۡنَٰكَ إِلَّا فِتۡنَةٗ لِّلنَّاسِ وَٱلشَّجَرَةَ ٱلۡمَلۡعُونَةَ فِي ٱلۡقُرۡءَانِۚ وَنُخَوِّفُهُمۡ فَمَا يَزِيدُهُمۡ إِلَّا طُغۡيَٰنٗا كَبِيرٗا ﴿٦٠﴾

---

61. "ನೀವು ಆದಮರಿಗೆ ಸಾಷ್ಟಾಂಗ ಮಾಡಿರಿ" ಎಂದು ನಾವು ದೇವದೂತರುಗಳಿಗೆ ಹೇಳಿದ ಸಂದರ್ಭ. ಅವರು ಸಾಷ್ಟಾಂಗ ಮಾಡಿದರು; ಇಬ್ಲೀಸನ ಹೊರತು. ಅವನು ಕೇಳಿದನು: "ನೀನು ಜೇಡಿಮಣ್ಣಿನಿಂದ ಸೃಷ್ಟಿಸಿದವನಿಗೆ ನಾನು ಸಾಷ್ಟಾಂಗ ಮಾಡಬೇಕೇ?"

وَإِذۡ قُلۡنَا لِلۡمَلَٰٓئِكَةِ ٱسۡجُدُواْ لِأٓدَمَ فَسَجَدُوٓاْ إِلَّآ إِبۡلِيسَ قَالَ ءَأَسۡجُدُ لِمَنۡ خَلَقۡتَ طِينٗا ﴿٦١﴾

---

62. ಇಬ್ಲೀಸ್ ಹೇಳಿದನು: "ನೀನು ನನಗಿಂತಲೂ ಹೆಚ್ಚು ಶ್ರೇಷ್ಠತೆ ನೀಡಿದ ಈ ವ್ಯಕ್ತಿಯನ್ನು ನೋಡು. ನೀನು ನನಗೆ ಪುನರುತ್ಥಾನದ ದಿನದವರೆಗೆ ಕಾಲಾವಕಾಶ ನೀಡಿದರೆ, ಕೆಲವರನ್ನು

قَالَ أَرَءَيۡتَكَ هَٰذَا ٱلَّذِي كَرَّمۡتَ عَلَيَّ لَئِنۡ أَخَّرۡتَنِ إِلَىٰ يَوۡمِ ٱلۡقِيَٰمَةِ لَأَحۡتَنِكَنَّ ذُرِّيَّتَهُۥٓ

---

ಯಾವುದೇ ಜ್ಞಾನವಿಲ್ಲ.

[1] ಪ್ರವಾದಿ ಮುಹಮ್ಮದರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಆಕಾಶಾರೋಹಣ ಮಾಡಿದಾಗ ಅಲ್ಲಿ ನರಕವನ್ನು ಮತ್ತು ಅದರ ಶಿಕ್ಷೆಗಳನ್ನು ನೋಡಿದರು. ಅದನ್ನು ಅವರಿಗೆ ಜನರಿಗೆ ವಿವರಿಸಿದಾಗ ಸತ್ಯನಿಷೇಧಿಗಳು ತೀವ್ರವಾಗಿ ಲೇವಡಿ ಮಾಡಿದರು. ನರಕದಲ್ಲಿರುವ ಝುಕ್ಕೂಮ್ ಮರದ ಬಗ್ಗೆ ಹೇಳಿದಾಗಲೂ ವಿರೋಧಿಗಳು ತೀವ್ರವಾಗಿ ಹಾಸ್ಯ ಮಾಡಿದರು.

ಹೊರತುಪಡಿಸಿ ಇವನ ಸಂಪೂರ್ಣ ಸಂತಾನವನ್ನು ನಾನು ನನ್ನ ವಶಕ್ಕೆ ಪಡೆಯುವೆನು.”

إِلَّا قَلِيلٗا ٦٢

---

63. ಅಲ್ಲಾಹು ಹೇಳಿದನು: “ಇಲ್ಲಿಂದ ತೊಲಗು! ಅವರಲ್ಲಿ ಯಾರು ನಿನ್ನನ್ನು ಅನುಸರಿಸುತ್ತಾರೋ, ನಿಮ್ಮೆಲ್ಲರಿಗೂ ನರಕಾಗ್ನಿಯೇ ಪ್ರತಿಫಲವಾಗಿದೆ. ಅದು ಪೂರ್ಣರೂಪದ ಪ್ರತಿಫಲವಾಗಿದೆ.

قَالَ ٱذۡهَبۡ فَمَن تَبِعَكَ مِنۡهُمۡ فَإِنَّ جَهَنَّمَ جَزَآؤُكُمۡ جَزَآءٗ مَّوۡفُورٗا ٦٣

---

64. ಅವರಲ್ಲಿ ಯಾರನ್ನೆಲ್ಲಾ ನಿನಗೆ ನಿನ್ನ ಧ್ವನಿಯ ಮೂಲಕ ದಾರಿತಪ್ಪಿಸಲು ಸಾಧ್ಯವಾಗುತ್ತದೋ ದಾರಿತಪ್ಪಿಸು. ನಿನ್ನ ಅಶ್ವದಳ ಮತ್ತು ಪದಾತಿದಳದ ಮೂಲಕ ಅವರ ಮೇಲೆ ಮುಗಿಬೀಳು. ಅವರ ಆಸ್ತಿ ಮತ್ತು ಮಕ್ಕಳಲ್ಲಿ ಅವರೊಡನೆ ಸೇರಿಕೋ. ಅವರಿಗೆ ಆಶ್ವಾಸನೆಗಳನ್ನು ನೀಡು.” ಶೈತಾನನು ಅವರಿಗೆ ನೀಡುವ ಆಶ್ವಾಸನೆಗಳು ಕೇವಲ ವಂಚನೆಗಳಾಗಿವೆ.

وَٱسۡتَفۡزِزۡ مَنِ ٱسۡتَطَعۡتَ مِنۡهُم بِصَوۡتِكَ وَأَجۡلِبۡ عَلَيۡهِم بِخَيۡلِكَ وَرَجِلِكَ وَشَارِكۡهُمۡ فِي ٱلۡأَمۡوَٰلِ وَٱلۡأَوۡلَٰدِ وَعِدۡهُمۡۚ وَمَا يَعِدُهُمُ ٱلشَّيۡطَٰنُ إِلَّا غُرُورًا ٦٤

---

65. “ನಿಶ್ಚಯವಾಗಿಯೂ ನನ್ನ ದಾಸರ ಮೇಲೆ ನಿನಗೆ ಯಾವುದೇ ಅಧಿಕಾರವಿಲ್ಲ. ಕಾರ್ಯನಿರ್ವಾಹಕನಾಗಿ ನಿನ್ನ ಪರಿಪಾಲಕನೇ (ಅಲ್ಲಾಹನೇ) ಸಾಕು”.

إِنَّ عِبَادِي لَيۡسَ لَكَ عَلَيۡهِمۡ سُلۡطَٰنٞۚ وَكَفَىٰ بِرَبِّكَ وَكِيلٗا ٦٥

---

66. ನಿಮಗೋಸ್ಕರ ಕಡಲಲ್ಲಿ ನಾವೆಗಳನ್ನು ಚಲಾಯಿಸುವವನೇ ನಿಮ್ಮ ಪರಿಪಾಲಕನು (ಅಲ್ಲಾಹು). ನೀವು ಅವನ ಔದಾರ್ಯವನ್ನು ಅರಸುವುದಕ್ಕಾಗಿ. ಖಂಡಿತವಾಗಿಯೂ ಅವನಿಗೆ ನಿಮ್ಮ ಮೇಲೆ ಅತ್ಯಧಿಕ ಕರುಣೆಯಿದೆ.

رَّبُّكُمُ ٱلَّذِي يُزۡجِي لَكُمُ ٱلۡفُلۡكَ فِي ٱلۡبَحۡرِ لِتَبۡتَغُواْ مِن فَضۡلِهِۦٓۚ إِنَّهُۥ كَانَ بِكُمۡ رَحِيمٗا ٦٦

---

67. ಕಡಲಲ್ಲಿ ನಿಮಗೇನಾದರೂ ತೊಂದರೆಯಾದರೆ ನೀವು ಅಲ್ಲಾಹನನ್ನು ಬಿಟ್ಟು ಯಾರನ್ನೆಲ್ಲಾ ಕರೆದು ಪ್ರಾರ್ಥಿಸುತ್ತೀರೋ ಅವರೆಲ್ಲರೂ ನಿಮ್ಮನ್ನು ಬಿಟ್ಟು ಹೋಗುವರು. ಆದರೆ ಅಲ್ಲಾಹು ನಿಮ್ಮನ್ನು ಸುರಕ್ಷಿತವಾಗಿ ದಡ ಸೇರಿಸಿದರೆ ನೀವು ವಿಮುಖರಾಗುತ್ತೀರಿ. ಮನುಷ್ಯನು ಮಹಾ ಕೃತಘ್ನನಾಗಿದ್ದಾನೆ.

وَإِذَا مَسَّكُمُ ٱلضُّرُّ فِي ٱلۡبَحۡرِ ضَلَّ مَن تَدۡعُونَ إِلَّآ إِيَّاهُۖ فَلَمَّا نَجَّىٰكُمۡ إِلَى ٱلۡبَرِّ أَعۡرَضۡتُمۡۚ وَكَانَ ٱلۡإِنسَٰنُ كَفُورًا ٦٧

---

68. ಅವನು ನಿಮ್ಮನ್ನು ದಡದ ಒಂದು ಭಾಗಕ್ಕೆ (ಒಯ್ದು) ಅಲ್ಲಿ ನಿಮ್ಮನ್ನು (ಭೂಮಿಯಲ್ಲಿ) ಹುಗಿಯುವಂತೆ ಮಾಡಲಾರನು ಅಥವಾ ಅವನು ನಿಮ್ಮ ಮೇಲೆ ಕಲ್ಲಿನ ಮಳೆಯನ್ನು ಸುರಿಸಲಾರನೆಂದು ನೀವು ನಿರ್ಭಯರಾಗಿದ್ದೀರಾ? ನಂತರ ನಿಮ್ಮ ಕಾರ್ಯನಿರ್ವಹಣೆ ಮಾಡಲು ನೀವು ಯಾರನ್ನೂ ಕಾಣಲಾರಿರಿ.

أَفَأَمِنتُمۡ أَن يَخۡسِفَ بِكُمۡ جَانِبَ ٱلۡبَرِّ أَوۡ يُرۡسِلَ عَلَيۡكُمۡ حَاصِبٗا ثُمَّ لَا تَجِدُواْ لَكُمۡ وَكِيلًا ٦٨

---

69. ಅಥವಾ ಅವನು ನಿಮ್ಮನ್ನು ಮತ್ತೊಮ್ಮೆ ಕಡಲಿಗೆ ಒಯ್ದು, ನಿಮ್ಮ ಮೇಲೆ ಚಂಡಮಾರುತವನ್ನು ಕಳುಹಿಸಿ, ನೀವು ನಿಷೇಧಿಸಿದ್ದರಿಂದ ನಿಮ್ಮನ್ನು ಕಡಲಲ್ಲಿ ಮುಳುಗಿಸಿ ಬಿಡಲಾರನೆಂದು ನೀವು

أَمۡ أَمِنتُمۡ أَن يُعِيدَكُمۡ فِيهِ تَارَةً أُخۡرَىٰ فَيُرۡسِلَ عَلَيۡكُمۡ قَاصِفٗا مِّنَ ٱلرِّيحِ فَيُغۡرِقَكُم بِمَا كَفَرۡتُمۡ ثُمَّ لَا تَجِدُواْ لَكُمۡ

ನಿರ್ಭಯರಾಗಿದ್ದೀರಾ? ನಂತರ ಅದಕ್ಕಾಗಿ ನಮ್ಮ ಮೇಲೆ ಸೇಡು ತೀರಿಸಿಕೊಳ್ಳಲು ನೀವು ಯಾರನ್ನೂ ಕಾಣಲಾರಿರಿ.

عَلَيْنَا بِهِۦ تَبِيعًا ﴿٦٩﴾

---

70. ನಿಶ್ಚಯವಾಗಿಯೂ ನಾವು ಆದಮರ ಮಕ್ಕಳನ್ನು (ಮಾನವರನ್ನು) ಗೌರವಿಸಿದ್ದೇವೆ. ಅವರನ್ನು ಕಡಲಲ್ಲೂ, ನೆಲದಲ್ಲೂ ಸವಾರಿ ಮಾಡಿಸಿದ್ದೇವೆ. ಅವರಿಗೆ ಶುದ್ಧ ವಸ್ತುಗಳಿಂದ ಆಹಾರವನ್ನು ಒದಗಿಸಿದ್ದೇವೆ. ನಮ್ಮ ಅನೇಕ ಸೃಷ್ಟಿಗಳಿಗಿಂತ ಹೆಚ್ಚು ನಾವು ಅವರಿಗೆ ಶ್ರೇಷ್ಠತೆಯನ್ನು ನೀಡಿದ್ದೇವೆ.

وَلَقَدْ كَرَّمْنَا بَنِىٓ ءَادَمَ وَحَمَلْنَـٰهُمْ فِى ٱلْبَرِّ
وَٱلْبَحْرِ وَرَزَقْنَـٰهُم مِّنَ ٱلطَّيِّبَـٰتِ وَفَضَّلْنَـٰهُمْ
عَلَىٰ كَثِيرٍ مِّمَّنْ خَلَقْنَا تَفْضِيلًا ﴿٧٠﴾

---

71. ನಾವು ಎಲ್ಲಾ ಮನುಷ್ಯರನ್ನೂ ಅವರ ಮುಖಂಡರೊಂದಿಗೆ ಕರೆದು ಒಟ್ಟುಗೂಡಿಸುವ ದಿನ. ಆಗ ಯಾರಿಗೆ ಅವನ ಕರ್ಮಪು-ಸ್ತಕವನ್ನು ಅವನ ಬಲಗೈಯಲ್ಲಿ ನೀಡಲಾಗುತ್ತದೋ—ಅವರು ತಮ್ಮ ಕರ್ಮಪುಸ್ತಕವನ್ನು ಓದುವರು. ಅವರಿಗೆ (ಖರ್ಜೂರದ ಬೀಜದಲ್ಲಿರುವ) ನೂಲಿನಷ್ಟೂ ಅನ್ಯಾಯವಾಗುವುದಿಲ್ಲ.

يَوْمَ نَدْعُوا۟ كُلَّ أُنَاسٍۭ بِإِمَـٰمِهِمْ ۖ فَمَنْ أُوتِىَ
كِتَـٰبَهُۥ بِيَمِينِهِۦ فَأُو۟لَـٰٓئِكَ يَقْرَءُونَ كِتَـٰبَهُمْ
وَلَا يُظْلَمُونَ فَتِيلًا ﴿٧١﴾

---

72. ಯಾರು ಈ ಲೋಕದಲ್ಲಿ ಕುರುಡನಾಗಿರುತ್ತಾನೋ ಅವನು ಪರಲೋಕದಲ್ಲೂ ಕುರುಡನಾಗಿರುತ್ತಾನೆ. ಅಷ್ಟೇ ಅಲ್ಲ, ಅತ್ಯಧಿಕ ದಾರಿತಪ್ಪಿದವನೂ ಆಗಿರುತ್ತಾನೆ.

وَمَن كَانَ فِى هَـٰذِهِۦٓ أَعْمَىٰ فَهُوَ فِى ٱلْـَٔاخِرَةِ
أَعْمَىٰ وَأَضَلُّ سَبِيلًا ﴿٧٢﴾

---

73. ನಾವು ನಿಮಗೆ ನೀಡುತ್ತಿರುವ ಈ ದೇವವಾಣಿಯಿಂದ ನಿಮ್ಮನ್ನು ತಪ್ಪಿಸಿಬಿಡಲು ಅವರು ಬಯಸುತ್ತಾರೆ. ನೀವು ನಮ್ಮ ಮೇಲೆ ಇದಲ್ಲದ ಬೇರೇನಾದರೂ ಸುಳ್ಳುಗಳನ್ನು ಆರೋಪಿಸುವುದ-ಕ್ಕಾಗಿ. ಹಾಗೇನಾದರೂ ಆದರೆ ಅವರು ನಿಮ್ಮನ್ನು ಆಪ್ತಮಿತ್ರನಾಗಿ ಸ್ವೀಕರಿಸುತ್ತಿದ್ದರು.

وَإِن كَادُوا۟ لَيَفْتِنُونَكَ عَنِ ٱلَّذِىٓ أَوْحَيْنَآ
إِلَيْكَ لِتَفْتَرِىَ عَلَيْنَا غَيْرَهُۥ ۖ وَإِذًا لَّٱتَّخَذُوكَ
خَلِيلًا ﴿٧٣﴾

---

74. ನಾವು ನಿಮ್ಮನ್ನು ದೃಢವಾಗಿ ನಿಲ್ಲಿಸದಿರುತ್ತಿದ್ದರೆ ನೀವು ಅವರ ಕಡೆಗೆ ಸ್ವಲ್ಪವಾದರೂ ವಾಲುತ್ತಿದ್ದಿರಿ.

وَلَوْلَآ أَن ثَبَّتْنَـٰكَ لَقَدْ كِدتَّ تَرْكَنُ إِلَيْهِمْ
شَيْـًٔا قَلِيلًا ﴿٧٤﴾

---

75. ಹಾಗೇನಾದರೂ ಆದರೆ, ನಾವು ನಿಮಗೆ ಬದುಕಿರುವಾಗ ಇಮ್ಮಡಿ ಶಿಕ್ಷೆಯನ್ನು ಮತ್ತು ಮರಣದ ನಂತರ ಇಮ್ಮಡಿ ಶಿಕ್ಷೆಯನ್ನು ನೀಡುತ್ತಿದ್ದೆವು. ನಂತರ ನಮ್ಮ ವಿರುದ್ಧ ಸಹಾಯ ಮಾಡುವ ಯಾರನ್ನೂ ನೀವು ಕಾಣಲಾರಿರಿ.

إِذًا لَّأَذَقْنَـٰكَ ضِعْفَ ٱلْحَيَوٰةِ وَضِعْفَ ٱلْمَمَاتِ
ثُمَّ لَا تَجِدُ لَكَ عَلَيْنَا نَصِيرًا ﴿٧٥﴾

---

76. ಅವರು ನಿಮ್ಮನ್ನು ಈ ಊರಿನಿಂದ ಇನ್ನೇನು ತೊಲಗಿಸುವುದರಲ್ಲಿ-ದ್ದರು. ನಿಮ್ಮನ್ನು ಇಲ್ಲಿಂದ ಓಡಿಸುವುದೇ ಅವರ ಉದ್ದೇಶವಾಗಿದೆ. ಹಾಗೇನಾದರೂ ಆದರೆ, ನಿಮ್ಮ ನಂತರ ಅವರು ಅಲ್ಪ ಸಮಯದವರೆಗೆ ಮಾತ್ರ ಅಲ್ಲಿ ವಾಸಿಸುತ್ತಿದ್ದರು.

وَإِن كَادُوا۟ لَيَسْتَفِزُّونَكَ مِنَ ٱلْأَرْضِ لِيُخْرِجُوكَ
مِنْهَا ۖ وَإِذًا لَّا يَلْبَثُونَ خِلَـٰفَكَ إِلَّا قَلِيلًا ﴿٧٦﴾

---

77. ಇದು ನಿಮಗಿಂತ ಮೊದಲು ನಾವು ಕಳುಹಿಸಲಾದ ನಮ್ಮ

سُنَّةَ مَن قَدْ أَرْسَلْنَا قَبْلَكَ مِن رُّسُلِنَا ۖ وَلَا تَجِدُ

| | | |
|---|---|---|
| لِسُنَّتِنَا تَحۡوِيلًا ﴿٧٧﴾ | | ಸಂದೇಶವಾಹಕರ ವಿಷಯದಲ್ಲಿ ಕೈಗೊಂಡ ಕ್ರಮವಾಗಿದೆ. ನಮ್ಮ ಕ್ರಮದಲ್ಲಿ ನೀವು ಯಾವುದೇ ಬದಲಾವಣೆಯನ್ನು ಕಾಣಲಾರಿರಿ. |
| أَقِمِ ٱلصَّلَوٰةَ لِدُلُوكِ ٱلشَّمۡسِ إِلَىٰ غَسَقِ ٱلَّيۡلِ وَقُرۡءَانَ ٱلۡفَجۡرِۖ إِنَّ قُرۡءَانَ ٱلۡفَجۡرِ كَانَ مَشۡهُودٗا ﴿٧٨﴾ | 78. | ಸೂರ್ಯನು (ಮಧ್ಯರೇಖೆಯಿಂದ) ಸರಿಯುವ ಸಮಯದಿಂದ ತೊಡಗಿ ಕತ್ತಲಾಗುವ ತನಕ ನಮಾಝ್ ಸಂಸ್ಥಾಪಿಸಿರಿ. ಪ್ರಭಾತದ ಕುರ್‌ಆನ್ ಪಠಣ ಮಾಡಿರಿ. ಪ್ರಭಾತದ ಕುರ್‌ಆನ್ ಪಠಣವು ಸಾಕ್ಷಿಯಾಗಿರುತ್ತದೆ.[1] |
| وَمِنَ ٱلَّيۡلِ فَتَهَجَّدۡ بِهِۦ نَافِلَةٗ لَّكَ عَسَىٰٓ أَن يَبۡعَثَكَ رَبُّكَ مَقَامٗا مَّحۡمُودٗا ﴿٧٩﴾ | 79. | ರಾತ್ರಿಯ ಕೆಲವು ಸಮಯದಲ್ಲಿ ತಹಜ್ಜುದ್ ನಮಾಝ್ ಮಾಡುತ್ತಾ ಕುರ್‌ಆನ್ ಪಠಿಸಿರಿ. ಇದು ನಿಮಗೆ ಮಾತ್ರವಿರುವ ಹೆಚ್ಚಳವಾಗಿದೆ. ನಿಮ್ಮ ಪರಿಪಾಲಕನು (ಅಲ್ಲಾಹು) ನಿಮ್ಮನ್ನು ಸ್ತುತ್ಯರ್ಹ ಸ್ಥಾನಕ್ಕೆ ಕಳುಹಿಸಲೂಬಹುದು.[2] |
| وَقُل رَّبِّ أَدۡخِلۡنِي مُدۡخَلَ صِدۡقٖ وَأَخۡرِجۡنِي مُخۡرَجَ صِدۡقٖ وَٱجۡعَل لِّي مِن لَّدُنكَ سُلۡطَٰنٗا نَّصِيرٗا ﴿٨٠﴾ | 80. | ಹೇಳಿರಿ: “ನನ್ನ ಪರಿಪಾಲಕನೇ! ನನ್ನನ್ನು ಎಲ್ಲಿಗೆ ಪ್ರವೇಶ ಮಾಡಿಸಿದರೂ ಉತ್ತಮವಾಗಿ ಪ್ರವೇಶ ಮಾಡಿಸು ಮತ್ತು ಎಲ್ಲಿಂದ ನಿರ್ಗಮಿಸುವಂತೆ ಮಾಡಿದರೂ ಉತ್ತಮವಾಗಿ ನಿರ್ಗಮಿಸುವಂತೆ ಮಾಡು. ನನಗೆ ನಿನ್ನ ಕಡೆಯಿಂದ ಅಧಿಕಾರ ಮತ್ತು ಸಹಾಯವನ್ನು ನೀಡು.” |
| وَقُلۡ جَآءَ ٱلۡحَقُّ وَزَهَقَ ٱلۡبَٰطِلُۚ إِنَّ ٱلۡبَٰطِلَ كَانَ زَهُوقٗا ﴿٨١﴾ | 81. | ಹೇಳಿರಿ: “ಸತ್ಯವು ಬಂದಿದೆ ಮತ್ತು ಅಸತ್ಯವು ನಾಶವಾಗಿದೆ. ಅಸತ್ಯವು ನಾಶವಾಗಿಯೇ ತೀರುತ್ತದೆ.” |
| وَنُنَزِّلُ مِنَ ٱلۡقُرۡءَانِ مَا هُوَ شِفَآءٞ وَرَحۡمَةٞ لِّلۡمُؤۡمِنِينَ وَلَا يَزِيدُ ٱلظَّٰلِمِينَ إِلَّا خَسَارٗا ﴿٨٢﴾ | 82. | ನಾವು ಅವತೀರ್ಣಗೊಳಿಸುವ ಈ ಕುರ್‌ಆನ್ ಸತ್ಯವಿಶ್ವಾಸಿ-ಗಳಿಗೆ ಉಪಶಮನ ಮತ್ತು ದಯೆಯಾಗಿದೆ. ಇದು ಅಕ್ರಮಿಗಳಿಗೆ ನಷ್ಟವಲ್ಲದೆ ಬೇರೇನನ್ನೂ ಹೆಚ್ಚಿಸುವುದಿಲ್ಲ. |
| وَإِذَآ أَنۡعَمۡنَا عَلَى ٱلۡإِنسَٰنِ أَعۡرَضَ وَنَـَٔا بِجَانِبِهِۦ وَإِذَا مَسَّهُ ٱلشَّرُّ كَانَ يَـُٔوسٗا ﴿٨٣﴾ | 83. | ನಾವು ಮಾನವನಿಗೆ ಅನುಗ್ರಹವನ್ನು ದಯಪಾಲಿಸಿದರೆ, ಅವನು ವಿಮುಖನಾಗುತ್ತಾನೆ ಮತ್ತು ದೂರ ಸರಿಯುತ್ತಾನೆ. ಆದರೆ ಅವನಿಗೆ ತೊಂದರೆ ಉಂಟಾದರೆ ಅವನು ಹತಾಶನಾಗಿ ಬಿಡುತ್ತಾನೆ. |
| قُلۡ كُلّٞ يَعۡمَلُ عَلَىٰ شَاكِلَتِهِۦ فَرَبُّكُمۡ أَعۡلَمُ | 84. | ಹೇಳಿರಿ: “ಎಲ್ಲರೂ ತಮ್ಮ ತಮ್ಮ ವಿಧಾನದಂತೆ |

[1] ಮಧ್ಯಾಹ್ನದ ನಂತರ ರಾತ್ರಿಯವರೆಗೆ ನಾಲ್ಕು ನಮಾಝ್‌ಗಳಿವೆ. ಝುಹರ್, ಅಸರ್, ಮಗ್രಿಬ್ ಮತ್ತು ಇಶಾ. ಪ್ರಭಾತದ ಕುರ್‌ಆನ್ ಎಂದರೆ ಫಜ್ರ್ ನಮಾಝ್. ಫಜ್ರ್ ನಮಾಝ್‌ನ ಸಮಯದಲ್ಲಿ ದೇವದೂತರುಗಳು ಹಾಜರಾಗುತ್ತಾರೆ. ಮಾತ್ರವಲ್ಲ, ಆ ಸಮಯದಲ್ಲಿ ರಾತ್ರಿಯ ದೇವದೂತರುಗಳು ಮತ್ತು ಹಗಲಿನ ದೇವದೂತರುಗಳು ಸಮ್ಮಿಲನಗೊಳ್ಳುತ್ತಾರೆ.

[2] ತಹಜ್ಜುದ್ ನಮಾಝ್ ಎಂದರೆ ರಾತ್ರಿಯಲ್ಲಿ ಎದ್ದು ನಿರ್ವಹಿಸುವ ನಮಾಝ್. ಈ ನಮಾಝ್ ಕಡ್ಡಾಯವಲ್ಲ. ಆದರೆ ಪ್ರವಾದಿಯವರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇದು ಕಡ್ಡಾಯವಾಗಿದೆ. ಸ್ತುತ್ಯರ್ಹ ಸ್ಥಾನ (ಮಕಾಮೆ ಮಹ್ಮೂದ್) ಎಂದರೆ ಪುನರುತ್ಥಾನ ದಿನದಂದು ಅಲ್ಲಾಹು ಪ್ರವಾದಿ ಮುಹಮ್ಮದರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ವಿಶೇಷವಾಗಿ ನೀಡುವ ಸ್ಥಾನ. ಜನರೆಲ್ಲರನ್ನೂ ವಿಚಾರಣೆಗೆ ಕರೆಯಲು ಅವರು ಈ ಸ್ಥಾನದಲ್ಲಿ ನಿಂತು ಅತಿದೊಡ್ಡ ಶಿಫಾರಸು (ಶಫಾಅತ್ ಉಝ್ಮಾ) ಮಾಡುತ್ತಾರೆ.

ಕರ್ಮವೆಸಗುತ್ತಾರೆ. ಸರಿಯಾದ ಮಾರ್ಗದಲ್ಲಿರುವವರು ಯಾರೆಂದು ನಿಮ್ಮ ಪರಿಪಾಲಕನಿಗೆ (ಅಲ್ಲಾಹನಿಗೆ) ಬಹಳ ಚೆನ್ನಾಗಿ ತಿಳಿದಿದೆ."

بِمَنۡ هُوَ أَهۡدَىٰ سَبِيلٗا ﴿٨٤﴾

85. ಅವರು ನಿಮ್ಮೊಡನೆ ಆತ್ಮದ ಬಗ್ಗೆ ಪ್ರಶ್ನಿಸುತ್ತಾರೆ. ಹೇಳಿರಿ: "ಆತ್ಮವು ನನ್ನ ಪರಿಪಾಲಕನ (ಅಲ್ಲಾಹನ) ಆಜ್ಞೆಯಲ್ಲಿ ಸೇರಿದೆ. ನಿಮಗೆ ಬಹಳ ಕಡಿಮೆ ಜ್ಞಾನವನ್ನು ಮಾತ್ರ ನೀಡಲಾಗಿದೆ."

وَيَسۡـَٔلُونَكَ عَنِ ٱلرُّوحِۖ قُلِ ٱلرُّوحُ مِنۡ أَمۡرِ رَبِّي وَمَآ أُوتِيتُم مِّنَ ٱلۡعِلۡمِ إِلَّا قَلِيلٗا ﴿٨٥﴾

86. ನಾವು ಇಚ್ಛಿಸಿದರೆ ನಿಮಗೆ ನೀಡಿದ ದೇವವಾಣಿಯನ್ನು ನಾವು ಖಂಡಿತ ಹಿಂದೆಗೆಯುವೆವು. ನಂತರ ಅದಕ್ಕೆ ಸಂಬಂಧಿಸಿ ನಮ್ಮ ವಿರುದ್ಧ ನೀವು ಯಾವುದೇ ಬೆಂಬಲಿಗರನ್ನು ಕಾಣಲಾರಿರಿ.

وَلَئِن شِئۡنَا لَنَذۡهَبَنَّ بِٱلَّذِيٓ أَوۡحَيۡنَآ إِلَيۡكَ ثُمَّ لَا تَجِدُ لَكَ بِهِۦ عَلَيۡنَا وَكِيلًا ﴿٨٦﴾

87. ಇದು ನಿಮ್ಮ ಪರಿಪಾಲಕನ (ಅಲ್ಲಾಹನ) ದಯೆಯಿಂದಲೇ ಆಗಿದೆ. ನಿಜಕ್ಕೂ ನಿಮ್ಮ ಮೇಲೆ ಅವನು ಮಹಾ ಔದಾರ್ಯವನ್ನು ಹೊಂದಿದ್ದಾನೆ.

إِلَّا رَحۡمَةٗ مِّن رَّبِّكَۚ إِنَّ فَضۡلَهُۥ كَانَ عَلَيۡكَ كَبِيرٗا ﴿٨٧﴾

88. ಹೇಳಿರಿ: "ಈ ಕುರ್‌ಆನಿನಂತಿರುವ ಒಂದು ಗ್ರಂಥವನ್ನು ರಚಿಸಿ ತರಲು ಮನುಷ್ಯರು ಮತ್ತು ಜಿನ್ನ್‌ಗಳು ಒಟ್ಟು ಸೇರಿದರೂ ಇಂತಹ ಒಂದು ಗ್ರಂಥವನ್ನು ತರಲು ಅವರಿಗೆ ಸಾಧ್ಯವಿಲ್ಲ. ಅವರು ಪರಸ್ಪರ ಸಹಾಯ ಮಾಡಿದರೂ ಸಹ."

قُل لَّئِنِ ٱجۡتَمَعَتِ ٱلۡإِنسُ وَٱلۡجِنُّ عَلَىٰٓ أَن يَأۡتُواْ بِمِثۡلِ هَٰذَا ٱلۡقُرۡءَانِ لَا يَأۡتُونَ بِمِثۡلِهِۦ وَلَوۡ كَانَ بَعۡضُهُمۡ لِبَعۡضٖ ظَهِيرٗا ﴿٨٨﴾

89. ನಿಶ್ಚಯವಾಗಿಯೂ ಈ ಕುರ್‌ಆನ್‌ನಲ್ಲಿ ನಾವು ಜನರಿಗೆ ಎಲ್ಲಾ ರೀತಿಯ ಉದಾಹರಣೆಗಳನ್ನು ವಿವರಿಸಿದ್ದೇವೆ. ಆದರೆ ಜನರಲ್ಲಿ ಹೆಚ್ಚಿನವರು ನಿಷೇಧಿಸಲು ಮಾತ್ರ ಮುಂದಾಗುತ್ತಾರೆ.

وَلَقَدۡ صَرَّفۡنَا لِلنَّاسِ فِي هَٰذَا ٱلۡقُرۡءَانِ مِن كُلِّ مَثَلٖ فَأَبَىٰٓ أَكۡثَرُ ٱلنَّاسِ إِلَّا كُفُورٗا ﴿٨٩﴾

90. ಅವರು ಹೇಳಿದರು: "ನೀನು ನಮಗೋಸ್ಕರ ಭೂಮಿಯಿಂದ ನೀರಿನ ಒರತೆಯನ್ನು ಚಿಮ್ಮಿ ಹರಿಸುವ ತನಕ ನಾವು ನಿನ್ನಲ್ಲಿ ವಿಶ್ವಾಸವಿಡುವುದೇ ಇಲ್ಲ.

وَقَالُواْ لَن نُّؤۡمِنَ لَكَ حَتَّىٰ تَفۡجُرَ لَنَا مِنَ ٱلۡأَرۡضِ يَنۢبُوعًا ﴿٩٠﴾

91. ಅಥವಾ ನಿನಗೆ ಖರ್ಜೂರ ಮತ್ತು ದ್ರಾಕ್ಷಿಯ ತೋಟವಿದ್ದು, ನೀನು ಅವುಗಳ ನಡುವೆ ಚಿಮ್ಮಿ ಹರಿಯುವ ನದಿಗಳನ್ನು ಹರಿಸುವ ತನಕ.

أَوۡ تَكُونَ لَكَ جَنَّةٞ مِّن نَّخِيلٖ وَعِنَبٖ فَتُفَجِّرَ ٱلۡأَنۡهَٰرَ خِلَٰلَهَا تَفۡجِيرًا ﴿٩١﴾

92. ಅಥವಾ ನೀನು ಬೆದರಿಸುವಂತೆ ಆಕಾಶವನ್ನು ನಮ್ಮ ಮೇಲೆ ತುಂಡು ತುಂಡಾಗಿ ಬೀಳಿಸುವ ತನಕ. ಅಥವಾ ನೀನು ಅಲ್ಲಾಹು ಮತ್ತು ದೇವದೂತರುಗಳನ್ನು ನಮ್ಮ ಮುಂಭಾಗಕ್ಕೆ ತರುವ ತನಕ.

أَوۡ تُسۡقِطَ ٱلسَّمَآءَ كَمَا زَعَمۡتَ عَلَيۡنَا كِسَفًا أَوۡ تَأۡتِيَ بِٱللَّهِ وَٱلۡمَلَٰٓئِكَةِ قَبِيلًا ﴿٩٢﴾

93. ಅಥವಾ ನಿನಗೆ ಬಂಗಾರದ ಮನೆಯುಂಟಾಗುವ ತನಕ, ಅಥವಾ ನೀನು ಆಕಾಶಕ್ಕೆ ಏರಿ ಹೋಗುವ ತನಕ. ನಮಗೆ ಓದಲಾಗುವ

أَوۡ يَكُونَ لَكَ بَيۡتٞ مِّن زُخۡرُفٍ أَوۡ تَرۡقَىٰ فِي ٱلسَّمَآءِ وَلَن نُّؤۡمِنَ لِرُقِيِّكَ حَتَّىٰ تُنَزِّلَ عَلَيۡنَا

كِتَٰبًا نَّقۡرَؤُهُۥۗ قُلۡ سُبۡحَانَ رَبِّي هَلۡ كُنتُ إِلَّا بَشَرًا رَّسُولًا ٩٣

ಒಂದು ಪುಸ್ತಕವನ್ನು ನೀನು ನಮಗೆ ಇಳಿಸಿಕೊಡುವ ತನಕ ನೀನು ಏರಿ ಹೋಗಿದ್ದೀ ಎಂದು ನಾವು ಖಂಡಿತ ನಂಬುವುದಿಲ್ಲ." (ಪ್ರವಾದಿಯವರೇ) ಹೇಳಿರಿ: "ನನ್ನ ಪರಿಪಾಲಕನು (ಅಲ್ಲಾಹು) ಪರಿಶುದ್ಧನು! ನಾನು ಒಬ್ಬ ಮನುಷ್ಯನಾದ ಸಂದೇಶವಾಹಕ ಮಾತ್ರವಾಗಿದ್ದೇನೆ."[1]

---

وَمَا مَنَعَ ٱلنَّاسَ أَن يُؤۡمِنُوٓاْ إِذۡ جَآءَهُمُ ٱلۡهُدَىٰٓ إِلَّآ أَن قَالُوٓاْ أَبَعَثَ ٱللَّهُ بَشَرًا رَّسُولًا ٩٤

94. ಜನರಿಗೆ ಸನ್ಮಾರ್ಗವು ಬಂದ ಬಳಿಕವೂ ಅವರು ಅದರಲ್ಲಿ ವಿಶ್ವಾಸವಿಡದಂತೆ ತಡೆಯಾಗಿರುವುದು, "ಅಲ್ಲಾಹು ಒಬ್ಬ ಮನುಷ್ಯನನ್ನು ಸಂದೇಶವಾಹಕನಾಗಿ ಕಳುಹಿಸಿದನೇ?" ಎಂಬ ಅವರ ಮಾತು ಮಾತ್ರವಾಗಿತ್ತು.

---

قُل لَّوۡ كَانَ فِي ٱلۡأَرۡضِ مَلَٰٓئِكَةٞ يَمۡشُونَ مُطۡمَئِنِّينَ لَنَزَّلۡنَا عَلَيۡهِم مِّنَ ٱلسَّمَآءِ مَلَكٗا رَّسُولٗا ٩٥

95. ಹೇಳಿರಿ: "ಭೂಮಿಯಲ್ಲಿ ದೇವದೂತರುಗಳು ಸಮಾಧಾನದಿಂದ ನಡೆಯುತ್ತಲೂ ವಾಸ ಮಾಡುತ್ತಲೂ ಇದ್ದಿದ್ದರೆ ನಾವು ಅವರಿಗೆ ಆಕಾಶದಿಂದ ಒಬ್ಬ ದೇವದೂತನನ್ನೇ ಸಂದೇಶವಾಹಕನಾಗಿ ಇಳಿಸುತ್ತಿದ್ದೆವು."

---

قُلۡ كَفَىٰ بِٱللَّهِ شَهِيدَۢا بَيۡنِي وَبَيۡنَكُمۡۚ إِنَّهُۥ كَانَ بِعِبَادِهِۦ خَبِيرَۢا بَصِيرٗا ٩٦

96. ಹೇಳಿರಿ: "ನನ್ನ ಮತ್ತು ನಿಮ್ಮ ನಡುವೆ ಸಾಕ್ಷಿಯಾಗಿ ಅಲ್ಲಾಹು ಸಾಕು. ನಿಶ್ಚಯವಾಗಿಯೂ ಅವನು ತನ್ನ ದಾಸರ ಬಗ್ಗೆ ಸೂಕ್ಷ್ಮವಾಗಿ ತಿಳಿದವನು ಮತ್ತು ವೀಕ್ಷಿಸುವವನಾಗಿದ್ದಾನೆ."

---

وَمَن يَهۡدِ ٱللَّهُ فَهُوَ ٱلۡمُهۡتَدِۖ وَمَن يُضۡلِلۡ فَلَن تَجِدَ لَهُمۡ أَوۡلِيَآءَ مِن دُونِهِۦۖ وَنَحۡشُرُهُمۡ يَوۡمَ ٱلۡقِيَٰمَةِ عَلَىٰ وُجُوهِهِمۡ عُمۡيٗا وَبُكۡمٗا وَصُمّٗاۖ مَّأۡوَىٰهُمۡ جَهَنَّمُۖ كُلَّمَا خَبَتۡ زِدۡنَٰهُمۡ سَعِيرٗا ٩٧

97. ಅಲ್ಲಾಹು ಯಾರಿಗೆ ಸನ್ಮಾರ್ಗವನ್ನು ತೋರಿಸುತ್ತಾನೋ ಅವನು ಸನ್ಮಾರ್ಗವನ್ನು ಪಡೆಯುತ್ತಾನೆ. ಅವನು ಯಾರನ್ನು ದುರ್ಮಾರ್ಗಿಯಾಗಿ ಮಾಡುತ್ತಾನೋ—ಅವರಿಗೆ ಅವನಲ್ಲದೆ ಬೇರೆ ರಕ್ಷಕರನ್ನು ನೀವು ಕಾಣಲಾರಿರಿ. ಪುನರುತ್ಥಾನ ದಿನದಂದು ನಾವು ಅವರನ್ನು ಅವರ ಮುಖದ ಮೇಲೆ ನಡೆಯುವವರಾಗಿ ಒಟ್ಟುಗೂಡಿಸುವೆವು. ಆಗ ಅವರು ಕುರುಡರು, ಮೂಕರು ಮತ್ತು ಕಿವುಡರಾಗಿರುವರು. ನರಕಾಗ್ನಿಯೇ ಅವರ ವಾಸಸ್ಥಳ. ಅದು ತಣ್ಣಗಾಗುವಾಗಲೆಲ್ಲಾ ನಾವು ಅದನ್ನು ಭುಗಿಲೇಳುವಂತೆ ಉರಿಸುವೆವು.

---

ذَٰلِكَ جَزَآؤُهُم بِأَنَّهُمۡ كَفَرُواْ بِـَٔايَٰتِنَا وَقَالُوٓاْ أَءِذَا كُنَّا عِظَٰمٗا وَرُفَٰتًا أَءِنَّا لَمَبۡعُوثُونَ

98. ಅದು ಅವರಿಗೆ ನೀಡಲಾಗುವ ಪ್ರತಿಫಲವಾಗಿದೆ. ಏಕೆಂದರೆ ಅವರು ನಮ್ಮ ವಚನಗಳನ್ನು ನಿಷೇಧಿಸಿದರು ಮತ್ತು ಅವರು ಕೇಳಿದರು: "ನಾವು ಮೂಳೆಗಳು ಮತ್ತು ಚಿಂದಿ

---

[1] ಅಂದರೆ ನಾನು ನಿಮ್ಮಂತಹ ಒಬ್ಬ ಮನುಷ್ಯ. ನೀವು ಹೇಳುವ ಈ ಕಾರ್ಯಗಳನ್ನು ಮಾಡಲು ಮನುಷ್ಯನಿಗೆ ಸಾಧ್ಯವಿಲ್ಲ. ಆದ್ದರಿಂದ ಇವೆಲ್ಲವನ್ನೂ ಮಾಡಿ ತೋರಿಸಬೇಕೆಂದು ನೀವು ನನ್ನೊಡನೆ ಕೇಳುವುದರಲ್ಲಿ ಅರ್ಥವಿಲ್ಲ. ನಾನು ಅಲ್ಲಾಹನ ಸಂದೇಶವಾಹಕನಾಗಿದ್ದೇನೆ. ಅವನ ಸಂದೇಶಗಳನ್ನು ನಿಮಗೆ ತಲುಪಿಸಿಕೊಡುವುದು ಮಾತ್ರ ನನ್ನ ಕೆಲಸ. ನೀವು ಕೇಳುವಾಗಲೆಲ್ಲಾ ಪವಾಡಗಳನ್ನು ತೋರಿಸುವುದು ನನ್ನ ಕೆಲಸವಲ್ಲ. ಆದರೆ ಅಲ್ಲಾಹು ನನ್ನ ಮೂಲಕ ಪವಾಡ ತೋರಿಸಲು ಬಯಸಿದರೆ ನಾನು ಪವಾಡವನ್ನು ತೋರಿಸಬಲ್ಲೆ.

خَلۡقٗا جَدِيدًا ﴿٩٨﴾

ಅವಶೇಷಗಳಾಗಿ ಬಿಟ್ಟ ಬಳಿಕವೂ ನಮ್ಮನ್ನು ಹೊಸ ಸೃಷ್ಟಿಯಾಗಿ ಎಬ್ಬಿಸಲಾಗುವುದೇ?”

---

أَوَلَمۡ يَرَوۡاْ أَنَّ ٱللَّهَ ٱلَّذِي خَلَقَ ٱلسَّمَٰوَٰتِ وَٱلۡأَرۡضَ قَادِرٌ عَلَىٰٓ أَن يَخۡلُقَ مِثۡلَهُمۡ وَجَعَلَ لَهُمۡ أَجَلٗا لَّا رَيۡبَ فِيهِ فَأَبَى ٱلظَّٰلِمُونَ إِلَّا كُفُورٗا ﴿٩٩﴾

99. ಭೂಮ್ಯಾಕಾಶಗಳನ್ನು ಸೃಷ್ಟಿಸಿದ ಅಲ್ಲಾಹನಿಗೆ ಅವರಂತಹ ಇನ್ನೊಂದು ಸೃಷ್ಟಿಯನ್ನು ಸೃಷ್ಟಿಸುವ ಶಕ್ತಿಯಿದೆಯೆಂದು ಅವರು ನೋಡುವುದಿಲ್ಲವೇ? ಅವನು ಅವರಿಗೆ ಒಂದು ಅವಧಿಯನ್ನು ನಿಶ್ಚಯಿಸಿದನು. ಅದರಲ್ಲಿ ಸಂಶಯವೇ ಇಲ್ಲ. ಆದರೆ ಅಕ್ರಮಿಗಳು ನಿಷೇಧಿಸುವುದನ್ನಲ್ಲದೆ ಬೇರೇನೂ ಮಾಡುವುದಿಲ್ಲ.

---

قُل لَّوۡ أَنتُمۡ تَمۡلِكُونَ خَزَآئِنَ رَحۡمَةِ رَبِّيٓ إِذٗا لَّأَمۡسَكۡتُمۡ خَشۡيَةَ ٱلۡإِنفَاقِۚ وَكَانَ ٱلۡإِنسَٰنُ قَتُورٗا ﴿١٠٠﴾

100. (ಪ್ರವಾದಿಯವರೇ) ಹೇಳಿರಿ: “ನನ್ನ ಪರಿಪಾಲಕನ (ಅಲ್ಲಾಹನ) ದಯೆಯ ಖಜಾನೆಗಳು ನಿಮ್ಮ ಅಧೀನದಲ್ಲಿರುತ್ತಿದ್ದರೆ ಖರ್ಚಾಗಿ ಬಿಡಬಹುದೆಂಬ ಭಯದಿಂದ ನೀವು ಅದನ್ನು ತಡೆಹಿಡಿಯುತ್ತಿದ್ದಿರಿ. ಮನುಷ್ಯನು ಕಡು ಜಿಪುಣನಾಗಿದ್ದಾನೆ.”

---

وَلَقَدۡ ءَاتَيۡنَا مُوسَىٰ تِسۡعَ ءَايَٰتِۭ بَيِّنَٰتٖۖ فَسۡـَٔلۡ بَنِيٓ إِسۡرَٰٓءِيلَ إِذۡ جَآءَهُمۡ فَقَالَ لَهُۥ فِرۡعَوۡنُ إِنِّي لَأَظُنُّكَ يَٰمُوسَىٰ مَسۡحُورٗا ﴿١٠١﴾

101. ನಾವು ಮೂಸಾರಿಗೆ ಒಂಬತ್ತು ಸ್ಪಷ್ಟ ದೃಷ್ಟಾಂತಗಳನ್ನು ನೀಡಿದ್ದೆವು.[1] ನೀವು ಇಸ್ರಾಯೇಲ್ ಮಕ್ಕಳೊಡನೆ ಮೂಸಾ ಅವರ ಬಳಿಗೆ ಬಂದಾಗ ಸಂದರ್ಭದ ಬಗ್ಗೆ ಕೇಳಿ ನೋಡಿ. ಆಗ ಫರೋಹ ಹೇಳಿದನು: “ಓ ಮೂಸಾ! ನೀನು ಖಂಡಿತ ಮಾಟಕ್ಕೊಳಗಾಗಿದ್ದೀ ಎಂದು ನನಗೆ ತೋರುತ್ತಿದೆ.”

---

قَالَ لَقَدۡ عَلِمۡتَ مَآ أَنزَلَ هَٰٓؤُلَآءِ إِلَّا رَبُّ ٱلسَّمَٰوَٰتِ وَٱلۡأَرۡضِ بَصَآئِرَ وَإِنِّي لَأَظُنُّكَ يَٰفِرۡعَوۡنُ مَثۡبُورٗا ﴿١٠٢﴾

102. ಮೂಸಾ ಹೇಳಿದರು: “ಭೂಮ್ಯಾಕಾಶಗಳ ಪರಿಪಾಲಕನೇ (ಅಲ್ಲಾಹನೇ) ಇವುಗಳನ್ನು ಸ್ಪಷ್ಟ ದೃಷ್ಟಾಂತಗಳಾಗಿ ಅವತೀರ್ಣಗೊಳಿಸಿದ್ದಾನೆಂದು ಖಂಡಿತವಾಗಿಯೂ ನಿನಗೆ ತಿಳಿದಿದೆ. ಓ ಫರೋಹ! ಖಂಡಿತವಾಗಿಯೂ ನೀನು ಸರ್ವನಾಶವಾಗುವೆ ಎಂದು ನನಗೆ ತೋರುತ್ತಿದೆ.”

---

فَأَرَادَ أَن يَسۡتَفِزَّهُم مِّنَ ٱلۡأَرۡضِ فَأَغۡرَقۡنَٰهُ وَمَن مَّعَهُۥ جَمِيعٗا ﴿١٠٣﴾

103. ಅವನು ಅವರನ್ನು (ಇಸ್ರಾಯೇಲ್ ಮಕ್ಕಳನ್ನು) ಭೂಮಿಯಿಂದ ಓಡಿಸಲು ನಿರ್ಧರಿಸಿದನು. ಆದರೆ ನಾವು ಅವನನ್ನು ಮತ್ತು ಅವನ ಸಂಗಡಿಗರನ್ನು (ಕಡಲಲ್ಲಿ) ಮುಳುಗಿಸಿದೆವು.

---

وَقُلۡنَا مِنۢ بَعۡدِهِۦ لِبَنِيٓ إِسۡرَٰٓءِيلَ ٱسۡكُنُواْ ٱلۡأَرۡضَ فَإِذَا جَآءَ وَعۡدُ ٱلۡأٓخِرَةِ جِئۡنَا بِكُمۡ لَفِيفٗا ﴿١٠٤﴾

104. ಅವನ ಸಾವಿನ ನಂತರ ನಾವು ಇಸ್ರಾಯೇಲ್ ಮಕ್ಕಳೊಡನೆ ಹೇಳಿದೆವು: “ನೀವು ಈ ಭೂಮಿಯಲ್ಲಿ ವಾಸಿಸಿರಿ. ಪರಲೋಕದ ವಾಗ್ದಾನವು ಬಂದು ಬಿಟ್ಟರೆ ನಾವು ನಿಮ್ಮೆಲ್ಲರನ್ನೂ ಒಟ್ಟಾಗಿ ಕರೆತರುವೆವು.”

---

وَبِٱلۡحَقِّ أَنزَلۡنَٰهُ وَبِٱلۡحَقِّ نَزَلَۗ وَمَآ أَرۡسَلۡنَٰكَ

105. ನಾವು ಇದನ್ನು (ಕುರ್‌ಆನನ್ನು) ಸತ್ಯದೊಂದಿಗೇ

---

[1] ಒಂಬತ್ತು ದೃಷ್ಟಾಂತಗಳು ಎಂದರೆ ಸರ್ಪವಾಗಿ ಮಾರ್ಪಡುವ ಕೋಲು, ಬೆಳ್ಳಗಾಗುವ ಕೈ, ಬರಗಾಲ, ಹಣ್ಣುಗಳ ಅಭಾವ, ಚಂಡಮಾರುತ, ಮಿಡತೆ, ಹೇನು, ಕಪ್ಪೆ ಮತ್ತು ರಕ್ತ.

إِلَّا مُبَشِّرًا وَنَذِيرًا ﴿١٠٥﴾

ಅವತೀರ್ಣಗೊಳಿಸಿದ್ದೇವೆ ಮತ್ತು ಅದು ಸತ್ಯದೊಂದಿಗೇ ಅವತೀರ್ಣವಾಗಿದೆ. ನಾವು ನಿಮ್ಮನ್ನು ಸುವಾರ್ತೆ ತಿಳಿಸುವುದಕ್ಕಾಗಿ ಮತ್ತು ಮುನ್ನೆಚ್ಚರಿಕೆ ನೀಡುವುದಕ್ಕಾಗಿಯೇ ಹೊರತು ಕಳುಹಿಸಿಲ್ಲ.

---

وَقُرْءَانًا فَرَقْنَٰهُ لِتَقْرَأَهُۥ عَلَى ٱلنَّاسِ عَلَىٰ مُكْثٍ وَنَزَّلْنَٰهُ تَنزِيلًا ﴿١٠٦﴾

106. ನೀವು ಈ ಕುರ್‌ಆನನ್ನು ಜನರಿಗೆ ಸಾವಕಾಶವಾಗಿ ಓದಿಕೊಡುವುದಕ್ಕಾಗಿ ನಾವು ಇದನ್ನು ಸ್ವಲ್ಪ ಸ್ವಲ್ಪವಾಗಿ ಅವತೀರ್ಣಗೊಳಿಸಿದ್ದೇವೆ. ನಾವು ಅದನ್ನು ನಿಮಗೆ ಹಂತ ಹಂತವಾಗಿ ಅವತೀರ್ಣಗೊಳಿಸಿದ್ದೇವೆ.

---

قُلْ ءَامِنُوا۟ بِهِۦٓ أَوْ لَا تُؤْمِنُوٓا۟ ۚ إِنَّ ٱلَّذِينَ أُوتُوا۟ ٱلْعِلْمَ مِن قَبْلِهِۦٓ إِذَا يُتْلَىٰ عَلَيْهِمْ يَخِرُّونَ لِلْأَذْقَانِ سُجَّدًا ﴿١٠٧﴾

107. ಹೇಳಿರಿ “ನೀವು ಇದರಲ್ಲಿ (ಕುರ್‌ಆನ್‌ನಲ್ಲಿ) ವಿಶ್ವಾಸವಿಡಿ ಅಥವಾ ವಿಶ್ವಾಸವಿಡಬೇಡಿ. ನಿಶ್ಚಯವಾಗಿಯೂ ಇದಕ್ಕೆ ಮೊದಲು ಜ್ಞಾನ ನೀಡಲಾದವರು ಯಾರೋ—ಅವರಿಗೆ ಇದನ್ನು ಓದಿಕೊಟ್ಟರೆ ಅವರು ಸಾಷ್ಟಾಂಗ ಮಾಡುತ್ತಾ ಗಲ್ಲಗಳ ಮೇಲೆ ಬೀಳುತ್ತಾರೆ.”

---

وَيَقُولُونَ سُبْحَٰنَ رَبِّنَآ إِن كَانَ وَعْدُ رَبِّنَا لَمَفْعُولًا ﴿١٠٨﴾

108. ಅವರು ಹೇಳುತ್ತಾರೆ: “ನಮ್ಮ ಪರಿಪಾಲಕನು (ಅಲ್ಲಾಹು) ಪರಿಶುದ್ಧನು! ನಮ್ಮ ಪರಿಪಾಲಕನ (ಅಲ್ಲಾಹನ) ವಾಗ್ದಾನವು ಖಂಡಿತ ಜಾರಿಯಾಗುತ್ತದೆ.”

---

وَيَخِرُّونَ لِلْأَذْقَانِ يَبْكُونَ وَيَزِيدُهُمْ خُشُوعًا ﴿١٠٩﴾

109. ಅವರು ಅಳುತ್ತಾ ಗಲ್ಲಗಳ ಮೇಲೆ ಬೀಳುತ್ತಾರೆ. ಅದು ಅವರಿಗೆ ವಿನಮ್ರತೆಯನ್ನು ಹೆಚ್ಚಿಸುತ್ತದೆ.

---

قُلِ ٱدْعُوا۟ ٱللَّهَ أَوِ ٱدْعُوا۟ ٱلرَّحْمَٰنَ ۖ أَيًّا مَّا تَدْعُوا۟ فَلَهُ ٱلْأَسْمَآءُ ٱلْحُسْنَىٰ ۚ وَلَا تَجْهَرْ بِصَلَاتِكَ وَلَا تُخَافِتْ بِهَا وَٱبْتَغِ بَيْنَ ذَٰلِكَ سَبِيلًا ﴿١١٠﴾

110. (ಪ್ರವಾದಿಯವರೇ) ಹೇಳಿರಿ: “ನೀವು ಅಲ್ಲಾಹು ಎಂದು ಕರೆಯಿರಿ ಅಥವಾ ರಹ್ಮಾನ್ ಎಂದು ಕರೆಯಿರಿ. ನೀವು ಯಾವ ಹೆಸರಲ್ಲಿ ಕರೆದರೂ ಅವನಿಗೆ ಅತ್ಯುತ್ತಮವಾದ ಹೆಸರುಗಳಿವೆ.” ನೀವು ನಮಾಝನ್ನು ಏರಿದ ಧ್ವನಿಯಲ್ಲಿ ನಿರ್ವಹಿಸಬೇಡಿ. ಸಂಪೂರ್ಣ ತಗ್ಗಿದ ಧ್ವನಿಯಲ್ಲೂ ನಿರ್ವಹಿಸಬೇಡಿ. ಬದಲಿಗೆ, ಅವುಗಳ ನಡುವಿನ ಮಾರ್ಗವನ್ನು ಹುಡುಕಿರಿ.

---

وَقُلِ ٱلْحَمْدُ لِلَّهِ ٱلَّذِى لَمْ يَتَّخِذْ وَلَدًا وَلَمْ يَكُن لَّهُۥ شَرِيكٌ فِى ٱلْمُلْكِ وَلَمْ يَكُن لَّهُۥ وَلِىٌّ مِّنَ ٱلذُّلِّ ۖ وَكَبِّرْهُ تَكْبِيرًۢا ﴿١١١﴾

111. ಹೇಳಿರಿ: “ಸರ್ವಸ್ತುತಿಗಳು ಅಲ್ಲಾಹನಿಗೆ ಮೀಸಲು. ಅವನಿಗೆ ಯಾವುದೇ ಸಂತಾನವಿಲ್ಲ. ವಿಶ್ವದ ಆಧಿಪತ್ಯದಲ್ಲಿ ಅವನಿಗೆ ಯಾವುದೇ ಪಾಲುದಾರರಿಲ್ಲ. ಯಾವುದೇ ಸಂರಕ್ಷಕನನ್ನು ಇಟ್ಟುಕೊಳ್ಳುವಷ್ಟು ಅವನು ದುರ್ಬಲನೂ ಅಲ್ಲ. ಅವನ ಮಹತ್ವವನ್ನು ಪೂರ್ಣರೀತಿಯಲ್ಲಿ ಕೊಂಡಾಡಿರಿ.”

# 18. ಅಲ್-ಕಹ್ಫ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ತನ್ನ ದಾಸನ ಮೇಲೆ ಕುರ್‌ಆನ್ ಅವತೀರ್ಣಗೊಳಿಸಿದ ಅಲ್ಲಾಹನಿಗೆ ಸರ್ವಸ್ತುತಿ. ಅವನು ಅದರಲ್ಲಿ ಯಾವುದೇ ಕುಂದು-ಕೊರತೆಗಳನ್ನು ಮಾಡಿಲ್ಲ.

ٱلۡحَمۡدُ لِلَّهِ ٱلَّذِيٓ أَنزَلَ عَلَىٰ عَبۡدِهِ ٱلۡكِتَٰبَ وَلَمۡ يَجۡعَل لَّهُۥ عِوَجَاۜ ١

2. ಅವನು ಅದನ್ನು ಸರಿಯಾದ ರೀತಿಯಲ್ಲಿಟ್ಟಿದ್ದಾನೆ. ಅವನ ಕಡೆಯ ಕಠೋರ ಶಿಕ್ಷೆಯ ಬಗ್ಗೆ ಎಚ್ಚರಿಕೆ ನೀಡಲು ಮತ್ತು ಸತ್ಕರ್ಮವೆಸಗುವ ಸತ್ಯವಿಶ್ವಾಸಿಗಳಿಗೆ ಅತ್ಯುತ್ತಮ ಪ್ರತಿಫಲವಿದೆಯೆಂಬ ಸುವಾರ್ತೆಯನ್ನು ತಿಳಿಸಲು.

قَيِّمٗا لِّيُنذِرَ بَأۡسٗا شَدِيدٗا مِّن لَّدُنۡهُ وَيُبَشِّرَ ٱلۡمُؤۡمِنِينَ ٱلَّذِينَ يَعۡمَلُونَ ٱلصَّٰلِحَٰتِ أَنَّ لَهُمۡ أَجۡرًا حَسَنٗا ٢

3. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು.

مَّٰكِثِينَ فِيهِ أَبَدٗا ٣

4. ಮತ್ತು "ಅಲ್ಲಾಹನಿಗೆ ಮಕ್ಕಳಿದ್ದಾರೆ" ಎಂದು ಹೇಳುವವರಿಗೆ ಮುನ್ನೆಚ್ಚರಿಕೆ ನೀಡಲು.

وَيُنذِرَ ٱلَّذِينَ قَالُواْ ٱتَّخَذَ ٱللَّهُ وَلَدٗا ٤

5. ಅವರಿಗೆ ಅದರ ಬಗ್ಗೆ ಯಾವುದೇ ಜ್ಞಾನವಿಲ್ಲ; ಅವರ ಪೂರ್ವಜರಿಗೂ ಇಲ್ಲ. ಅವರ ಬಾಯಿಯಿಂದ ಹೊರಬರುವ ಆ ಮಾತು ಬಹಳ ಗಂಭೀರವಾಗಿದೆ. ಅವರು ಸುಳ್ಳನ್ನು ಮಾತ್ರ ಹೇಳುತ್ತಿದ್ದಾರೆ.

مَّا لَهُم بِهِۦ مِنۡ عِلۡمٖ وَلَا لِأٓبَآئِهِمۡۚ كَبُرَتۡ كَلِمَةٗ تَخۡرُجُ مِنۡ أَفۡوَٰهِهِمۡۚ إِن يَقُولُونَ إِلَّا كَذِبٗا ٥

6. ಅವರು ಈ ಸಂದೇಶದಲ್ಲಿ ವಿಶ್ವಾಸವಿಡದಿದ್ದರೆ, ಆ ನೋವಿನಿಂದ ನೀವು ನಿಮ್ಮ ಜೀವಕ್ಕೆ ಕುತ್ತು ತರಲೂಬಹುದು.[1]

فَلَعَلَّكَ بَٰخِعٞ نَّفۡسَكَ عَلَىٰٓ ءَاثَٰرِهِمۡ إِن لَّمۡ يُؤۡمِنُواْ بِهَٰذَا ٱلۡحَدِيثِ أَسَفًا ٦

7. ನಿಶ್ಚಯವಾಗಿಯೂ ನಾವು ಭೂಮಿಯ ಮೇಲಿರುವುದನ್ನು ಅದಕ್ಕೊಂದು ಅಲಂಕಾರವಾಗಿ ಮಾಡಿದ್ದೇವೆ. ಮನುಷ್ಯರಲ್ಲಿ ಅತ್ಯುತ್ತಮ ಕರ್ಮಗಳನ್ನು ಮಾಡುವವರು ಯಾರೆಂದು ಪರೀಕ್ಷಿಸುವುದಕ್ಕಾಗಿ.

إِنَّا جَعَلۡنَا مَا عَلَى ٱلۡأَرۡضِ زِينَةٗ لَّهَا لِنَبۡلُوَهُمۡ أَيُّهُمۡ أَحۡسَنُ عَمَلٗا ٧

8. ನಿಶ್ಚಯವಾಗಿಯೂ ನಾವು ಅದರ (ಭೂಮಿಯ) ಮೇಲಿರುವುದನ್ನು ಸಮತಟ್ಟಾದ ಬಯಲು ಪ್ರದೇಶವಾಗಿ ಪರಿವರ್ತಿಸುವೆವು.

وَإِنَّا لَجَٰعِلُونَ مَا عَلَيۡهَا صَعِيدٗا جُرُزًا ٨

9. ಗುಹೆ ಮತ್ತು ಶಿಲಾಶಾಸನದ ಜನರು ನಮ್ಮ ದೃಷ್ಟಾಂತಗಳಲ್ಲಿ

أَمۡ حَسِبۡتَ أَنَّ أَصۡحَٰبَ ٱلۡكَهۡفِ وَٱلرَّقِيمِ

[1] ಜನರೆಲ್ಲರೂ ಸತ್ಯವಿಶ್ವಾಸಿಗಳಾಗಬೇಕೆಂದು ಪ್ರವಾದಿ ಮುಹಮ್ಮದರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅತೀವ ಉತ್ಸಾಹವಿತ್ತು. ಜನರು ಸತ್ಯವನ್ನು ನಿಷೇಧಿಸುವುದನ್ನು ಕಾಣುವಾಗ ಅವರಿಗೆ ಬಹಳ ಬೇಸರವಾಗುತ್ತಿತ್ತು. ಅವರು ಎಷ್ಟು ನೊಂದುಕೊಳ್ಳುತ್ತಿದ್ದರೆಂದರೆ ಇದರಿಂದ ಅವರ ಜೀವಕ್ಕೇ ಅಪಾಯವಾಗಬಹುದೋ ಎಂಬ ಭಯವು ಕಾಡುತ್ತಿತ್ತು.

ಅತಿದೊಡ್ಡ ಅದ್ಭುತವಾಗಿದ್ದಾರೆಂದು ನೀವು ಭಾವಿಸಿದ್ದೀರಾ?

كَانُواْ مِنۡ ءَايَٰتِنَا عَجَبًا ٩

---

10. ಆ ಯುವಕರು ಗುಹೆಯಲ್ಲಿ ಆಶ್ರಯ ಪಡೆದ ಸಂದರ್ಭ.[1] ಅವರು ಹೇಳಿದರು: "ನಮ್ಮ ಪರಿಪಾಲಕನೇ! ನಮಗೆ ನಿನ್ನ ಕಡೆಯ ದಯೆಯನ್ನು ನೀಡಿ ಆಶೀರ್ವದಿಸು ಮತ್ತು ನಮ್ಮ ಕಾರ್ಯವನ್ನು ಸರಿಯಾದ ರೀತಿಯಲ್ಲಿ ನಿರ್ವಹಿಸಲು ನಮಗೆ ಅನುಕೂಲ ಮಾಡಿಕೊಡು."

إِذۡ أَوَى ٱلۡفِتۡيَةُ إِلَى ٱلۡكَهۡفِ فَقَالُواْ رَبَّنَآ ءَاتِنَا مِن لَّدُنكَ رَحۡمَةٗ وَهَيِّئۡ لَنَا مِنۡ أَمۡرِنَا رَشَدٗا ١٠

---

11. ಹೀಗೆ ನಾವು ಅನೇಕ ವರ್ಷಗಳ ಕಾಲ ಆ ಗುಹೆಯಲ್ಲಿ ಅವರ ಕಿವಿಗಳನ್ನು ಮುಚ್ಚಿದೆವು (ಅವರನ್ನು ನಿದ್ದೆಗೆ ಶರಣಾಗಿಸಿದೆವು).

فَضَرَبۡنَا عَلَىٰٓ ءَاذَانِهِمۡ فِي ٱلۡكَهۡفِ سِنِينَ عَدَدٗا ١١

---

12. ನಂತರ ನಾವು ಅವರನ್ನು ಎಬ್ಬಿಸಿದೆವು. ಅವರು ಗುಹೆಯಲ್ಲಿ ಎಷ್ಟು ವರ್ಷ ಕಳೆದಿದ್ದರೆಂದು ಆ ಎರಡು ಗುಂಪುಗಳಲ್ಲಿ ಖಚಿತವಾಗಿ ಲೆಕ್ಕ ಮಾಡಿದವರು ಯಾರೆಂದು ತಿಳಿಯುವುದಕ್ಕಾಗಿ.

ثُمَّ بَعَثۡنَٰهُمۡ لِنَعۡلَمَ أَيُّ ٱلۡحِزۡبَيۡنِ أَحۡصَىٰ لِمَا لَبِثُوٓاْ أَمَدٗا ١٢

---

13. ನಾವು ನಿಮಗೆ ಅವರ ನೈಜ ಸಮಾಚಾರವನ್ನು ವಿವರಿಸುವೆವು. ಅವರು ತಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ವಿಶ್ವಾಸವಿಟ್ಟ ಕೆಲವು ಯುವಕರಾಗಿದ್ದರು. ನಾವು ಅವರಿಗೆ ಸನ್ಮಾರ್ಗವನ್ನು ಹೆಚ್ಚಿಸಿಕೊಟ್ಟೆವು.

نَّحۡنُ نَقُصُّ عَلَيۡكَ نَبَأَهُم بِٱلۡحَقِّۚ إِنَّهُمۡ فِتۡيَةٌ ءَامَنُواْ بِرَبِّهِمۡ وَزِدۡنَٰهُمۡ هُدٗى ١٣

---

14. ಅವರು ಎದ್ದುನಿಂತು, "ಭೂಮ್ಯಾಕಾಶಗಳ ಪರಿಪಾಲಕನೇ ನಮ್ಮ ಪರಿಪಾಲಕ. ನಾವು ಅವನನ್ನು ಬಿಟ್ಟು ಬೇರೆ ದೇವರುಗಳನ್ನು ಕರೆದು ಪ್ರಾರ್ಥಿಸುವುದಿಲ್ಲ. ಹಾಗೇನಾದರೂ ಆದರೆ ನಾವು ಕಡು ಅನ್ಯಾಯದ ಮಾತನ್ನು ಹೇಳಿದವರಾಗುವೆವು" ಎಂದು ಘೋಷಿಸಿದ ಸಂದರ್ಭದಲ್ಲಿ ನಾವು ಅವರ ಹೃದಯಗಳಿಗೆ ದೃಢತೆಯನ್ನು ನೀಡಿದೆವು.

وَرَبَطۡنَا عَلَىٰ قُلُوبِهِمۡ إِذۡ قَامُواْ فَقَالُواْ رَبُّنَا رَبُّ ٱلسَّمَٰوَٰتِ وَٱلۡأَرۡضِ لَن نَّدۡعُوَاْ مِن دُونِهِۦٓ إِلَٰهٗاۖ لَّقَدۡ قُلۡنَآ إِذٗا شَطَطًا ١٤

---

15. "ನಮ್ಮ ಈ ಜನರು ಅಲ್ಲಾಹನನ್ನು ಬಿಟ್ಟು ಬೇರೆ ದೇವರುಗಳನ್ನು ಸ್ವೀಕರಿಸಿದ್ದಾರೆ. ಅವರು ದೇವರುಗಳು ಎಂಬುದಕ್ಕೆ ಇವರೇಕೆ ಸ್ಪಷ್ಟ ಸಾಕ್ಷ್ಯಾಧಾರವನ್ನು ತರುವುದಿಲ್ಲ? ಅಲ್ಲಾಹನ ಹೆಸರಲ್ಲಿ ಸುಳ್ಳು ಆರೋಪಿಸುವವನಿಗಿಂತಲೂ ದೊಡ್ಡ ಅಕ್ರಮಿ ಯಾರು?"

هَٰٓؤُلَآءِ قَوۡمُنَا ٱتَّخَذُواْ مِن دُونِهِۦٓ ءَالِهَةٗۖ لَّوۡلَا يَأۡتُونَ عَلَيۡهِم بِسُلۡطَٰنِۢ بَيِّنٖۖ فَمَنۡ أَظۡلَمُ مِمَّنِ ٱفۡتَرَىٰ عَلَى ٱللَّهِ كَذِبٗا ١٥

---

16. (ಅವರು ಪರಸ್ಪರ ಹೇಳಿದರು): "ನೀವು ಅವರನ್ನು ಮತ್ತು

وَإِذِ ٱعۡتَزَلۡتُمُوهُمۡ وَمَا يَعۡبُدُونَ إِلَّا ٱللَّهَ فَأۡوُۥٓاْ

---

[1] ಈ ಯುವಕರನ್ನು 'ಅಸ್‌ಹಾಬುಲ್ ಕಹ್ಫ್' (ಗುಹಾವಾಸಿಗಳು) ಎಂದು ಕರೆಯಲಾಗುತ್ತದೆ. ಇವರು ವಾಸವಾಗಿದ್ದ ಊರನ್ನು ದಖ್ಯಾನೂಸ್ ಎಂಬ ರಾಜ ಆಳುತ್ತಿದ್ದ. ಈತ ತನ್ನ ರಾಜ್ಯದಲ್ಲಿ ವಿಗ್ರಹಪೂಜೆ ಮತ್ತು ವಿಗ್ರಹಗಳಿಗೆ ಹರಕೆ ಹೊರುವುದನ್ನು ಕಡ್ಡಾಯಗೊಳಿಸಿದ. ಅಲ್ಲಾಹು ಕೆಲವು ಯುವಕರಿಗೆ ಏಕದೇವವಿಶ್ವಾಸದ ಕಡೆಗೆ ಮಾರ್ಗದರ್ಶನ ಮಾಡಿದ್ದ. ಅವರು ರಹಸ್ಯವಾಗಿ ಅಲ್ಲಾಹನನ್ನು ಆರಾಧಿಸುತ್ತಿದ್ದರು. ಕಾಲಕ್ರಮೇಣ, ಈ ವಿಷಯ ಊರಲ್ಲೆಲ್ಲಾ ಹಬ್ಬಿ ರಾಜನ ಕಿವಿಗೆ ಬಿತ್ತು. ಅವನು ಇವರನ್ನು ಆಸ್ಥಾನಕ್ಕೆ ಕರೆದು ವಿಚಾರಿಸಿದಾಗ ಅವರು ರಾಜನ ಮುಂದೆ ಧೈರ್ಯವಾಗಿ ಏಕದೇವವಿಶ್ವಾಸವನ್ನು ಘೋಷಿಸಿದರು. ನಂತರ ಅವರು ರಾಜನ ಶಿಕ್ಷೆಯಿಂದ ಪಾರಾಗಲು ಊರು ಬಿಟ್ಟು ಗುಹೆಯಲ್ಲಿ ಹೋಗಿ ನೆಲೆಸಿದರು.

إِلَى ٱلۡكَهۡفِ يَنشُرۡ لَكُمۡ رَبُّكُم مِّن رَّحۡمَتِهِۦ وَيُهَيِّئۡ لَكُم مِّنۡ أَمۡرِكُم مِّرۡفَقٗا ١٦

ಅಲ್ಲಾಹನನ್ನು ಬಿಟ್ಟು ಅವರು ಆರಾಧಿಸುತ್ತಿರುವ ದೇವರುಗಳನ್ನು ತೊರೆದಿದ್ದೀರಿ. ಆದ್ದರಿಂದ ನೀವು ಆ ಗುಹೆಯಲ್ಲಿ ಆಶ್ರಯ ಪಡೆಯಿರಿ. ನಿಮ್ಮ ಪರಿಪಾಲಕನು (ಅಲ್ಲಾಹು) ನಿಮಗೆ ಅವನ ದಯೆಯನ್ನು ಹೇರಳವಾಗಿ ದಯಪಾಲಿಸುವನು ಮತ್ತು ನಿಮ್ಮ ವಿಷಯದಲ್ಲಿ ನಿಮಗೆ ಅನುಕೂಲತೆ ಮಾಡಿಕೊಡುವನು."

17. وَتَرَى ٱلشَّمۡسَ إِذَا طَلَعَت تَّزَٰوَرُ عَن كَهۡفِهِمۡ ذَاتَ ٱلۡيَمِينِ وَإِذَا غَرَبَت تَّقۡرِضُهُمۡ ذَاتَ ٱلشِّمَالِ وَهُمۡ فِي فَجۡوَةٖ مِّنۡهُۚ ذَٰلِكَ مِنۡ ءَايَٰتِ ٱللَّهِۗ مَن يَهۡدِ ٱللَّهُ فَهُوَ ٱلۡمُهۡتَدِۖ وَمَن يُضۡلِلۡ فَلَن تَجِدَ لَهُۥ وَلِيّٗا مُّرۡشِدٗا ١٧

ಸೂರ್ಯ ಉದಯಿಸುವಾಗ ಅದು ಅವರ ಗುಹೆಯ ಬಲಭಾಗಕ್ಕೆ ಚಲಿಸುವುದನ್ನು ಮತ್ತು ಸೂರ್ಯ ಅಸ್ತಮಿಸುವಾಗ ಅದು ಅವರನ್ನು ದಾಟಿ ಎಡಭಾಗಕ್ಕೆ ಚಲಿಸುವುದನ್ನು ನೀವು ಕಾಣುವಿರಿ.[1] ಅವರು ಆ ಗುಹೆಯ ವಿಸ್ತಾರವಾದ ಭಾಗದಲ್ಲಿದ್ದಾರೆ. ಅದು ಅಲ್ಲಾಹನ ದೃಷ್ಟಾಂತಗಳಲ್ಲಿ ಒಂದಾಗಿದೆ. ಅಲ್ಲಾಹು ಯಾರಿಗೆ ಸನ್ಮಾರ್ಗವನ್ನು ತೋರಿಸುತ್ತಾನೋ ಅವನು ಸನ್ಮಾರ್ಗವನ್ನು ಪಡೆಯುತ್ತಾನೆ. ಅವನು ಯಾರನ್ನು ದಾರಿತಪ್ಪಿಸು-ತ್ತಾನೋ ಅವನಿಗೆ ಸರಿಯಾದ ಮಾರ್ಗವನ್ನು ತೋರಿಸಿಕೊಡುವ ಯಾವುದೇ ರಕ್ಷಕನನ್ನು ನೀವು ಎಂದಿಗೂ ಕಾಣಲಾರಿರಿ.

18. وَتَحۡسَبُهُمۡ أَيۡقَاظٗا وَهُمۡ رُقُودٞۚ وَنُقَلِّبُهُمۡ ذَاتَ ٱلۡيَمِينِ وَذَاتَ ٱلشِّمَالِۖ وَكَلۡبُهُم بَٰسِطٞ ذِرَاعَيۡهِ بِٱلۡوَصِيدِۚ لَوِ ٱطَّلَعۡتَ عَلَيۡهِمۡ لَوَلَّيۡتَ مِنۡهُمۡ فِرَارٗا وَلَمُلِئۡتَ مِنۡهُمۡ رُعۡبٗا ١٨

ಅವರು ಎಚ್ಚರದಲ್ಲಿದ್ದಾರೆಂದು ನೀವು ಭಾವಿಸಬಹುದು. ಆದರೆ ಅವರು ನಿದ್ರೆಯಲ್ಲಿದ್ದಾರೆ. ನಾವು ಅವರನ್ನು ಬಲಭಾಗಕ್ಕೂ ಎಡಭಾಗಕ್ಕೂ ಹೊರಳುವಂತೆ ಮಾಡುತ್ತೇವೆ. ಅವರ ನಾಯಿ ಗುಹೆಯ ಬಾಗಿಲಲ್ಲಿ ತನ್ನ ಎರಡು ಕೈಗಳನ್ನು ಚಾಚಿಕೊಂಡಿದೆ. ನೀವೇನಾದರೂ ಅವರ ಕಡೆಗೆ ಇಣುಕಿದರೆ, ಖಂಡಿತ ಬೆನ್ನು ತಿರುಗಿಸಿ ಓಡುವಿರಿ ಮತ್ತು ಆ ದೃಶ್ಯವನ್ನು ಕಂಡು ನೀವು ಭಯವಿಹ್ವಲರಾಗಿ ಬಿಡುವಿರಿ.

19. وَكَذَٰلِكَ بَعَثۡنَٰهُمۡ لِيَتَسَآءَلُواْ بَيۡنَهُمۡۚ قَالَ قَآئِلٞ مِّنۡهُمۡ كَمۡ لَبِثۡتُمۡۖ قَالُواْ لَبِثۡنَا يَوۡمًا أَوۡ بَعۡضَ يَوۡمٖۚ قَالُواْ رَبُّكُمۡ أَعۡلَمُ بِمَا لَبِثۡتُمۡ فَٱبۡعَثُوٓاْ أَحَدَكُم بِوَرِقِكُمۡ هَٰذِهِۦٓ إِلَى ٱلۡمَدِينَةِ فَلۡيَنظُرۡ أَيُّهَآ أَزۡكَىٰ طَعَامٗا فَلۡيَأۡتِكُم بِرِزۡقٖ مِّنۡهُ وَلۡيَتَلَطَّفۡ وَلَا يُشۡعِرَنَّ بِكُمۡ أَحَدًا ١٩

ಈ ರೀತಿ ಅವರು ಪರಸ್ಪರ ಕೇಳುವುದಕ್ಕಾಗಿ ನಾವು ಅವರನ್ನು ಎಬ್ಬಿಸಿದೆವು. ಅವರಲ್ಲೊಬ್ಬರು ಕೇಳಿದರು: "ನೀವು ಎಷ್ಟು ಕಾಲ ಗುಹೆಯಲ್ಲಿದ್ದಿರಿ?" ಇತರರು ಹೇಳಿದರು: "ನಾವು ಒಂದು ದಿನ ಅಥವಾ ದಿನದ ಕೆಲವು ತಾಸುಗಳಷ್ಟು ಕಾಲ ಗುಹೆಯಲ್ಲಿದ್ದೆವು." ಅವರು ಹೇಳಿದರು: "ನೀವು ಎಷ್ಟು ಕಾಲ ಗುಹೆಯಲ್ಲಿದ್ದಿರಿ ಎಂಬುದನ್ನು ನಿಮ್ಮ ಪರಿಪಾಲಕನು (ಅಲ್ಲಾಹು) ಬಹಳ ಚೆನ್ನಾಗಿ ತಿಳಿದಿದ್ದಾನೆ. ನೀವು ನಿಮ್ಮಲ್ಲೊಬ್ಬರನ್ನು ಈ ಬೆಳ್ಳಿ ನಾಣ್ಯದೊಂದಿಗೆ ನಗರಕ್ಕೆ ಕಳುಹಿಸಿ. ಅಲ್ಲಿ ಯಾರ ಬಳಿ ಶುದ್ಧ ಆಹಾರವಿದೆಯೆಂದು ನೋಡಿ ಅವನು ನಿಮಗೆ ಆಹಾರವನ್ನು ತರಲಿ. ಅವನು ಅತ್ಯಂತ ಜಾಗರೂಕನಾಗಿರಲಿ ಮತ್ತು ನಿಮ್ಮ ಬಗ್ಗೆ ಯಾರಿಗೂ ಸುಳಿವು

[1] ಅಂದರೆ ಇಡೀ ದಿನ ಬಿಸಿಲು ಆ ಗುಹೆಯೊಳಗೆ ಬೀಳದಂತೆ ಅದನ್ನು ವಿನ್ಯಾಸಗೊಳಿಸಲಾಗಿತ್ತು.

ನೀಡದಿರಲಿ.

---

20. ಅವರಿಗೆ ನಿಮ್ಮ ಬಗ್ಗೆ ಮಾಹಿತಿ ಸಿಕ್ಕಿದರೆ, ಅವರು ನಿಮ್ಮನ್ನು ಕಲ್ಲೆಸೆದು ಕೊಲ್ಲುವರು; ಅಥವಾ ನಿಮ್ಮನ್ನು ಬಲವಂತವಾಗಿ ಅವರ ಧರ್ಮಕ್ಕೆ ಸೇರಿಸುವರು. ಹಾಗೇನಾದರೂ ಆದರೆ ನೀವೆಂದಿಗೂ ಯಶಸ್ವಿಯಾಗಲಾರಿರಿ.”

إِنَّهُمۡ إِن يَظۡهَرُواْ عَلَيۡكُمۡ يَرۡجُمُوكُمۡ أَوۡ
يُعِيدُوكُمۡ فِي مِلَّتِهِمۡ وَلَن تُفۡلِحُوٓاْ إِذًا أَبَدٗا ٢٠

---

21. ಈ ರೀತಿ ನಾವು ಅವರ ಬಗ್ಗೆ ಜನರಿಗೆ ಸುಳಿವು ನೀಡಿದೆವು. ಅಲ್ಲಾಹನ ವಾಗ್ದಾನವು ಸತ್ಯವಾಗಿದೆ ಮತ್ತು ಅಂತ್ಯದಿನವು ಸಂಭವಿಸುತ್ತದೆಯೆಂಬ ವಿಷಯದಲ್ಲಿ ಸಂಶಯವೇ ಇಲ್ಲ ಎಂದು ಜನರು ತಿಳಿಯುವುದಕ್ಕಾಗಿ. ಅವರು ಗುಹಾವಾಸಿಗಳ ಬಗ್ಗೆ ಪರಸ್ಪರ ತರ್ಕಿಸುತ್ತಿದ್ದ ಸಂದರ್ಭ. ಅವರು ಹೇಳಿದರು: “ಇವರ ಗುಹೆಯ ಮೇಲೆ ಒಂದು ಕಟ್ಟಡವನ್ನು ನಿರ್ಮಿಸಿರಿ. ಅವರ ಬಗ್ಗೆ ಅವರ ಪರಿಪಾಲಕನಿಗೆ (ಅಲ್ಲಾಹನಿಗೆ) ಬಹಳ ಚೆನ್ನಾಗಿ ತಿಳಿದಿದೆ.” ಅವರ ವಿಷಯದಲ್ಲಿ ಪ್ರಾಬಲ್ಯ ಪಡೆದವರು ಹೇಳಿದರು: “ನಿಶ್ಚಯವಾಗಿಯೂ ನಾವು ಅವರ ಗುಹೆಯ ಬಳಿ ಒಂದು ಮಸೀದಿಯನ್ನು ನಿರ್ಮಿಸುತ್ತೇವೆ.”

وَكَذَٰلِكَ أَعۡثَرۡنَا عَلَيۡهِمۡ لِيَعۡلَمُوٓاْ أَنَّ وَعۡدَ ٱللَّهِ
حَقّٞ وَأَنَّ ٱلسَّاعَةَ لَا رَيۡبَ فِيهَآ إِذۡ يَتَنَٰزَعُونَ
بَيۡنَهُمۡ أَمۡرَهُمۡۖ فَقَالُواْ ٱبۡنُواْ عَلَيۡهِم بُنۡيَٰنٗاۖ
رَّبُّهُمۡ أَعۡلَمُ بِهِمۡۚ قَالَ ٱلَّذِينَ غَلَبُواْ عَلَىٰٓ أَمۡرِهِمۡ
لَنَتَّخِذَنَّ عَلَيۡهِم مَّسۡجِدٗا ٢١

---

22. ಅವರಲ್ಲಿ ಕೆಲವರು ಹೇಳುತ್ತಾರೆ: “ಗುಹಾವಾಸಿಗಳ ಸಂಖ್ಯೆ ಮೂರು; ನಾಲ್ಕನೆಯದು ಅವರ ನಾಯಿ.” ಇತರ ಕೆಲವರು ಹೇಳುತ್ತಾರೆ: “ಗುಹಾವಾಸಿಗಳ ಸಂಖ್ಯೆ ಐದು; ಆರನೆಯದು ಅವರ ನಾಯಿ.” ಅವರು ಅದೃಶ್ಯ ವಿಷಯಗಳ ಬಗ್ಗೆ ಊಹಿಸಿ ಹೇಳುತ್ತಿದ್ದಾರೆ. ಇತರ ಕೆಲವರು ಹೇಳುತ್ತಾರೆ: “ಗುಹಾವಾಸಿಗಳ ಸಂಖ್ಯೆ ಏಳು; ಎಂಟನೆಯದು ಅವರ ನಾಯಿ.” (ಪ್ರವಾದಿಯವರೇ) ಹೇಳಿರಿ: “ಅವರ ಸಂಖ್ಯೆ ಎಷ್ಟೆಂದು ನನ್ನ ಪರಿಪಾಲಕನಿಗೆ (ಅಲ್ಲಾಹನಿಗೆ) ಬಹಳ ಚೆನ್ನಾಗಿ ತಿಳಿದಿದೆ. ಕೆಲವರಿಗೆ ಮಾತ್ರ ಅವರ ಬಗ್ಗೆ ಮಾಹಿತಿಯಿದೆ. ಆದ್ದರಿಂದ ನೀವು ಅವರ ವಿಷಯದಲ್ಲಿ ಸ್ಪಷ್ಟ ಸಾಕ್ಷ್ಯವಿಲ್ಲದೆ ತರ್ಕಿಸಬೇಡಿ. ಅವರ ಬಗ್ಗೆ ಜನರಲ್ಲಿ ಯಾರೊಡನೆಯೂ ಅಭಿಪ್ರಾಯ ಕೇಳಬೇಡಿ.

سَيَقُولُونَ ثَلَٰثَةٞ رَّابِعُهُمۡ كَلۡبُهُمۡ وَيَقُولُونَ خَمۡسَةٞ
سَادِسُهُمۡ كَلۡبُهُمۡ رَجۡمَۢا بِٱلۡغَيۡبِۖ وَيَقُولُونَ سَبۡعَةٞ
وَثَامِنُهُمۡ كَلۡبُهُمۡۚ قُل رَّبِّيٓ أَعۡلَمُ بِعِدَّتِهِم مَّا
يَعۡلَمُهُمۡ إِلَّا قَلِيلٞۗ فَلَا تُمَارِ فِيهِمۡ إِلَّا مِرَآءٗ
ظَٰهِرٗا وَلَا تَسۡتَفۡتِ فِيهِم مِّنۡهُمۡ أَحَدٗا ٢٢

---

23. ಯಾವುದೇ ವಿಷಯದ ಬಗ್ಗೆ “ನಾನು ನಾಳೆ ಅದನ್ನು ಖಂಡಿತ ಮಾಡುತ್ತೇನೆ” ಎಂದು ಹೇಳಬೇಡಿ.

وَلَا تَقُولَنَّ لِشَاْيۡءٍ إِنِّي فَاعِلٞ ذَٰلِكَ غَدًا ٢٣

---

24. “ಇನ್ ಶಾ ಅಲ್ಲಾಹ್” (ಅಲ್ಲಾಹು ಇಚ್ಛಿಸಿದರೆ ಮಾಡುತ್ತೇನೆ) ಎಂದು ಅದಕ್ಕೆ ಸೇರಿಸದೆ.[1] ನಿಮಗೆ ಅದನ್ನು ಸೇರಿಸಲು

إِلَّآ أَن يَشَآءَ ٱللَّهُۚ وَٱذۡكُر رَّبَّكَ إِذَا نَسِيتَ
وَقُلۡ عَسَىٰٓ أَن يَهۡدِيَنِ رَبِّي لِأَقۡرَبَ

---

[1] ಒಮ್ಮೆ ಯಹೂದಿಗಳು ಪ್ರವಾದಿ ಮುಹಮ್ಮದರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಬಳಿಗೆ ಬಂದು ಮೂರು ಪ್ರಶ್ನೆಗಳ-ನ್ನು ಕೇಳಿದರು. ಆತ್ಮದ ನಿಜಸ್ಥಿತಿಯ ಬಗ್ಗೆ, ಗುಹಾವಾಸಿಗಳ ಬಗ್ಗೆ ಮತ್ತು ದುಲ್-ಕರ್ನೈನ್ ಬಗ್ಗೆ. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ

مِنۡ هَٰذَا رَشَدٗا ٢٤

ಮರೆತುಹೋದರೆ ನೆನಪಾದಾಗ ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಸ್ಮರಿಸಿರಿ. "ಸನ್ಮಾರ್ಗಕ್ಕೆ ಇದಕ್ಕಿಂತಲೂ ಹೆಚ್ಚು ಹತ್ತಿರವಾಗಿರುವ ಮಾತಿಗೆ ನನ್ನ ಪರಿಪಾಲಕನು (ಅಲ್ಲಾಹು) ನನ್ನನ್ನು ಮುನ್ನಡೆಸುವನೆಂದು ನನಗೆ ಸಂಪೂರ್ಣ ಭರವಸೆಯಿದೆ" ಎಂದು ಹೇಳಿರಿ.

---

وَلَبِثُواْ فِي كَهۡفِهِمۡ ثَلَٰثَ مِاْئَةٖ سِنِينَ وَٱزۡدَادُواْ تِسۡعٗا ٢٥

25. ಅವರು ತಮ್ಮ ಗುಹೆಯಲ್ಲಿ ಮುನ್ನೂರು ವರ್ಷಗಳ ಕಾಲ ವಾಸಿಸಿದ್ದರು ಮತ್ತು ಅವರು ಒಂಬತ್ತು ವರ್ಷಗಳನ್ನು ಹೆಚ್ಚಿಸಿದರು.[1]

---

قُلِ ٱللَّهُ أَعۡلَمُ بِمَا لَبِثُواْۖ لَهُۥ غَيۡبُ ٱلسَّمَٰوَٰتِ وَٱلۡأَرۡضِۖ أَبۡصِرۡ بِهِۦ وَأَسۡمِعۡۚ مَا لَهُم مِّن دُونِهِۦ مِن وَلِيّٖ وَلَا يُشۡرِكُ فِي حُكۡمِهِۦٓ أَحَدٗا ٢٦

26. ಹೇಳಿರಿ: "ಅವರು ಎಷ್ಟು ಕಾಲ ವಾಸಿಸಿದ್ದರು ಎಂಬ ಬಗ್ಗೆ ಅಲ್ಲಾಹನಿಗೆ ಬಹಳ ಚೆನ್ನಾಗಿ ತಿಳಿದಿದೆ. ಭೂಮ್ಯಾಕಾಶಗಳ ಅದೃಶ್ಯ ಜ್ಞಾನವಿರುವುದು ಅವನಿಗೆ ಮಾತ್ರ. ಅವನ ದೃಷ್ಟಿ ಮತ್ತು ಕೇಳುವ ಶಕ್ತಿ ಎಷ್ಟು ಸೂಕ್ಷ್ಮವಾಗಿದೆ! ಅವರಿಗೆ ಅವನ ಹೊರತು ಬೇರೆ ರಕ್ಷಕರಿಲ್ಲ. ಅವನು ತನ್ನ ಶಾಸನಾಧಿಕಾರದಲ್ಲಿ ಯಾರನ್ನೂ ಸಹಭಾಗಿಯಾಗಿ ಮಾಡುವುದಿಲ್ಲ."

---

وَٱتۡلُ مَآ أُوحِيَ إِلَيۡكَ مِن كِتَابِ رَبِّكَۖ لَا مُبَدِّلَ لِكَلِمَٰتِهِۦ وَلَن تَجِدَ مِن دُونِهِۦ مُلۡتَحَدٗا ٢٧

27. ನಿಮಗೆ ನಿಮ್ಮ ಪರಿಪಾಲಕನ (ಅಲ್ಲಾಹನ) ಗ್ರಂಥದಿಂದ ನೀಡಲಾದ ದೇವವಾಣಿಗಳನ್ನು ಪಠಿಸಿರಿ. ಅವನ ವಚನಗಳಿಗೆ ಬದಲಾವಣೆ ತರಲು ಯಾರಿಗೂ ಸಾಧ್ಯವಿಲ್ಲ. ಅವನ ಹೊರತು ಯಾವುದೇ ಆಶ್ರಯವನ್ನು ನೀವೆಂದಿಗೂ ಕಾಣಲಾರಿರಿ.

---

وَٱصۡبِرۡ نَفۡسَكَ مَعَ ٱلَّذِينَ يَدۡعُونَ رَبَّهُم بِٱلۡغَدَوٰةِ وَٱلۡعَشِيِّ يُرِيدُونَ وَجۡهَهُۥۖ وَلَا تَعۡدُ عَيۡنَاكَ عَنۡهُمۡ تُرِيدُ زِينَةَ ٱلۡحَيَوٰةِ ٱلدُّنۡيَاۖ وَلَا تُطِعۡ مَنۡ أَغۡفَلۡنَا قَلۡبَهُۥ عَن ذِكۡرِنَا وَٱتَّبَعَ هَوَىٰهُ وَكَانَ أَمۡرُهُۥ فُرُطٗا ٢٨

28. ತಮ್ಮ ಪರಿಪಾಲಕನ (ಅಲ್ಲಾಹನ) ಸಂಪ್ರೀತಿಯನ್ನು ಬಯಸುತ್ತಾ, ಮುಂಜಾನೆ ಮತ್ತು ಸಂಜೆ ಅವನನ್ನು ಕರೆದು ಪ್ರಾರ್ಥಿಸುವವರ ಜೊತೆಗೆ ನೀವು ನಿಮ್ಮನ್ನು ಸ್ಥೈರ್ಯದಿಂದ ನಿಲ್ಲಿಸಿರಿ. ಇಹಲೋಕ ಜೀವನದ ಅಲಂಕಾರಗಳಿಗೆ ಮರುಳಾಗಿ ನಿಮ್ಮ ದೃಷ್ಟಿಯು ಅವರಿಂದ ದೂರವಾಗದಿರಲಿ. ನಾವು ಯಾರ ಹೃದಯಕ್ಕೆ ನಮ್ಮ ನೆನಪು ಬರದಂತೆ ಮಾಡಿದ್ದೇವೆಯೋ, ಯಾರು ಸ್ವೇಚ್ಛೆಗಳನ್ನು ಹಿಂಬಾಲಿಸುತ್ತಾನೋ ಮತ್ತು ಯಾರ ಕರ್ಮಗಳು ಹದ್ದು ಮೀರಿವೆಯೋ ಅವರನ್ನು ಅನುಸರಿಸಬೇಡಿ.

---

وَقُلِ ٱلۡحَقُّ مِن رَّبِّكُمۡۖ فَمَن شَآءَ فَلۡيُؤۡمِن وَمَن شَآءَ فَلۡيَكۡفُرۡۚ إِنَّآ أَعۡتَدۡنَا لِلظَّٰلِمِينَ نَارًا

29. ಹೇಳಿರಿ: "ನನ್ನ ಈ ಸತ್ಯಸಂದೇಶವು ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯಿಂದಾಗಿದೆ. ಇಚ್ಛೆಯಿರುವವರು ಅದರಲ್ಲಿ

---

ಕೃಪೆ ಮತ್ತು ಶಾಂತಿಯಿರಲಿ) ದೇವವಾಣಿಯ ಮೂಲಕ ಉತ್ತರ ಬರಬಹುದೆಂಬ ನಿರೀಕ್ಷೆಯಿಂದ ನಾಳೆ ಹೇಳುತ್ತೇನೆ ಎಂದರು. ಆದರೆ 15 ದಿನಗಳ ತನಕ ಉತ್ತರ ಬರಲಿಲ್ಲ. ಕೊನೆಗೆ ಜಿಬ್ರೀಲ್ (ಅವರ ಮೇಲೆ ಶಾಂತಿಯಿರಲಿ) ಈ ಅಧ್ಯಾಯದೊಂದಿಗೆ ಬಂದರು. ಭವಿಷ್ಯದಲ್ಲಿ ಮಾಡುವ ಯಾವುದೇ ವಿಷಯದ ಬಗ್ಗೆ ಹೇಳುವಾಗ ಇನ್ ಶಾ ಅಲ್ಲಾಹ್ (ಅಲ್ಲಾಹು ಇಚ್ಛಿಸಿದರೆ ಮಾಡುತ್ತೇನೆ) ಎಂಬ ಮಾತನ್ನು ಸೇರಿಸಬೇಕೆಂದು ಇಲ್ಲಿ ಆಜ್ಞಾಪಿಸಲಾಗಿದೆ. ಹೇಳಲು ಮರೆತರೆ ನೆನಪಾದಾಗ ಹೇಳಬೇಕು.

[1] ಅಂದರೆ ಸೌರ ಗಣನೆಯಲ್ಲಿ 300 ವರ್ಷಗಳು ಮತ್ತು ಚಾಂದ್ರ ಗಣನೆಯಲ್ಲಿ 309 ವರ್ಷಗಳು.

ವಿಶ್ವಾಸವಿಡಲಿ ಮತ್ತು ಇಚ್ಛೆಯಿಲ್ಲದವರು ನಿಷೇಧಿಸಲಿ.
ನಿಶ್ಚಯವಾಗಿಯೂ, ನಾವು ಅಕ್ರಮಿಗಳಿಗೆ ನರಕಾಗ್ನಿಯನ್ನು ಸಿದ್ಧ-
ಗೊಳಿಸಿದ್ದೇವೆ. ಅದರ ಗೋಡೆಗಳು ಅವರನ್ನು ಆವರಿಸಿಕೊಂಡಿವೆ.
ಅವರು ಕುಡಿಯಲು ನೀರು ಕೇಳುವಾಗ ನಾವು ಅವರಿಗೆ
ಕಾಯಿಸಿದ ಎಣ್ಣೆಯ ಮಡ್ಡಿಯಂತಹ ನೀರನ್ನು ಕೊಡುವೆವು.
ಅದು ಅವರ ಮುಖಗಳನ್ನು ಸುಟ್ಟು ಬಿಡುತ್ತದೆ. ಆ ಪಾನೀಯವು
ಬಹಳ ನಿಕೃಷ್ಟವಾಗಿದೆ. ಆ ವಾಸಸ್ಥಳವು ಕೂಡ ಬಹಳ
ನಿಕೃಷ್ಟವಾಗಿದೆ.

أَحَاطَ بِهِمۡ سُرَادِقُهَاۚ وَإِن يَسۡتَغِيثُواْ يُغَاثُواْ بِمَآءٖ
كَٱلۡمُهۡلِ يَشۡوِي ٱلۡوُجُوهَۚ بِئۡسَ ٱلشَّرَابُ وَسَآءَتۡ
مُرۡتَفَقًا ٢٩

---

30. ನಿಶ್ಚಯವಾಗಿಯೂ ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು
ಯಾರೋ—ಅತ್ಯುತ್ತಮ ಕರ್ಮಗಳನ್ನು ಮಾಡುವ ಯಾರ
ಪ್ರತಿಫಲವನ್ನೂ ನಾವು ವ್ಯರ್ಥಗೊಳಿಸುವುದಿಲ್ಲ.

إِنَّ ٱلَّذِينَ ءَامَنُواْ وَعَمِلُواْ ٱلصَّٰلِحَٰتِ إِنَّا لَا
نُضِيعُ أَجۡرَ مَنۡ أَحۡسَنَ عَمَلًا ٣٠

---

31. ಅವರಿಗೆ ಶಾಶ್ವತವಾಸದ ಸ್ವರ್ಗೋದ್ಯಾನಗಳಿವೆ. ಅವರ
ತಳಭಾಗದಿಂದ ನದಿಗಳು ಹರಿಯುತ್ತವೆ. ಅಲ್ಲಿ ಅವರಿಗೆ ಚಿನ್ನದ
ಕಡಗಗಳನ್ನು ತೊಡಿಸಲಾಗುವುದು. ಅವರು ನಯವಾದ ಮತ್ತು
ದಪ್ಪ ಹಸಿರು ರೇಷ್ಮೆ ಬಟ್ಟೆಗಳನ್ನು ಧರಿಸುವರು. ಅಲ್ಲಿ ಅವರು
ಮಂಚಗಳಲ್ಲಿ ಒರಗಿ ಕುಳಿತು ವಿಶ್ರಾಂತಿ ಪಡೆಯುವರು. ಆ
ಪ್ರತಿಫಲವು ಬಹಳ ಉತ್ಕೃಷ್ಟವಾಗಿದೆ. ಆ ವಾಸಸ್ಥಳವು ಬಹಳ
ಶ್ರೇಷ್ಠವಾಗಿದೆ.

أُوْلَٰٓئِكَ لَهُمۡ جَنَّٰتُ عَدۡنٖ تَجۡرِي مِن تَحۡتِهِمُ
ٱلۡأَنۡهَٰرُ يُحَلَّوۡنَ فِيهَا مِنۡ أَسَاوِرَ مِن ذَهَبٖ
وَيَلۡبَسُونَ ثِيَابًا خُضۡرٗا مِّن سُندُسٖ وَإِسۡتَبۡرَقٖ
مُّتَّكِـِٔينَ فِيهَا عَلَى ٱلۡأَرَآئِكِۚ نِعۡمَ ٱلثَّوَابُ
وَحَسُنَتۡ مُرۡتَفَقٗا ٣١

---

32. ಅವರಿಗೆ ಒಂದು ಉದಾಹರಣೆಯನ್ನು ತಿಳಿಸಿಕೊಡಿ. ಇಬ್ಬರು ವ್ಯಕ್ತಿ-
ಗಳಿದ್ದರು. ಅವರಲ್ಲೊಬ್ಬನಿಗೆ ನಾವು ಎರಡು ದ್ರಾಕ್ಷಿ ತೋಟಗಳನ್ನು
ನೀಡಿದ್ದೆವು. ಆ ಎರಡು ತೋಟಗಳನ್ನು ಖರ್ಜೂರ ಮರಗಳು
ಸುತ್ತುವರಿಯುವಂತೆ ಮಾಡಿದ್ದೆವು. ಆ ತೋಟಗಳ ಮಧ್ಯೆ
ಹೊಲವನ್ನು ಕೂಡ ಮಾಡಿಕೊಟ್ಟಿದ್ದೆವು.

وَٱضۡرِبۡ لَهُم مَّثَلٗا رَّجُلَيۡنِ جَعَلۡنَا لِأَحَدِهِمَا
جَنَّتَيۡنِ مِنۡ أَعۡنَٰبٖ وَحَفَفۡنَٰهُمَا بِنَخۡلٖ وَجَعَلۡنَا
بَيۡنَهُمَا زَرۡعٗا ٣٢

---

33. ಆ ಎರಡು ತೋಟಗಳೂ ಅವುಗಳ ಫಲಗಳನ್ನು ನೀಡುತ್ತಿದ್ದವು.
ಅದರಲ್ಲಿ ಅವು ಏನನ್ನೂ ಕಡಿಮೆ ಮಾಡಿರಲಿಲ್ಲ. ಅವುಗಳ ಮಧ್ಯೆ
ತುಂಬಿ ಹರಿಯುವ ಒಂದು ಹೊಳೆಯನ್ನೂ ಮಾಡಿಕೊಟ್ಟಿದ್ದೆವು.

كِلۡتَا ٱلۡجَنَّتَيۡنِ ءَاتَتۡ أُكُلَهَا وَلَمۡ تَظۡلِم مِّنۡهُ
شَيۡـٔٗاۚ وَفَجَّرۡنَا خِلَٰلَهُمَا نَهَرٗا ٣٣

---

34. ಈ ಮಧ್ಯೆ, ಅವನ ಬಳಿ ಹಣ್ಣುಗಳಿದ್ದಾಗ, ಅವನು ತನ್ನ
ಗೆಳೆಯನೊಡನೆ ಮಾತನಾಡುತ್ತಾ ಹೇಳಿದನು: "ನನಗೆ
ನಿನಗಿಂತಲೂ ಹೆಚ್ಚು ಆಸ್ತಿಯಿದೆ. ಸಂತಾನದ ವಿಷಯದಲ್ಲೂ
ನಾನು ನಿನಗಿಂತ ಪ್ರಬಲನಾಗಿದ್ದೇನೆ."

وَكَانَ لَهُۥ ثَمَرٞ فَقَالَ لِصَٰحِبِهِۦ وَهُوَ يُحَاوِرُهُۥٓ أَنَا۠
أَكۡثَرُ مِنكَ مَالٗا وَأَعَزُّ نَفَرٗا ٣٤

---

35. ಅವನು ತನ್ನ ತೋಟವನ್ನು ಪ್ರವೇಶಿಸಿದನು. ಅವನು ಸ್ವಯಂ

وَدَخَلَ جَنَّتَهُۥ وَهُوَ ظَالِمٞ لِّنَفۡسِهِۦ قَالَ مَآ أَظُنُّ

ಅಕ್ರಮವೆಸಗಿದವನಾಗಿದ್ದನು. ಅವನು ಹೇಳಿದನು: "ಇದು ಯಾವತ್ತಾದರೂ ನಾಶವಾಗಬಹುದೆಂದು ನಾನು ಭಾವಿಸುವುದೇ ಇಲ್ಲ.

أَن تَبِيدَ هَٰذِهِۦٓ أَبَدًا ٣٥

36. ಅಂತ್ಯಸಮಯವು ಸಂಭವಿಸುವುದೆಂದು ಕೂಡ ನಾನು ಭಾವಿಸುವುದಿಲ್ಲ. ಇನ್ನು ನನ್ನನ್ನು ನನ್ನ ಪರಿಪಾಲಕನ (ಅಲ್ಲಾಹನ) ಬಳಿಗೆ ಹಿಂದಿರುಗಿಸಲ್ಪಟ್ಟರೂ ಸಹ, ನಾನು ಅಲ್ಲಿಯೂ ಕೂಡ ಇದಕ್ಕಿಂತಲೂ ಶ್ರೇಷ್ಠವಾದುದನ್ನು ಬದಲಿಯಾಗಿ ಪಡೆಯುವೆನು."

وَمَآ أَظُنُّ ٱلسَّاعَةَ قَآئِمَةً وَلَئِن رُّدِدتُّ إِلَىٰ رَبِّي
لَأَجِدَنَّ خَيْرًا مِّنْهَا مُنقَلَبًا ٣٦

37. ಅವನೊಡನೆ ಮಾತನಾಡುತ್ತಾ ಅವನ ಗೆಳೆಯ ಹೇಳಿದನು: "ನಿನ್ನನ್ನು ಮಣ್ಣಿನಿಂದ, ನಂತರ ವೀರ್ಯದಿಂದ ಸೃಷ್ಟಿಸಿ, ನಿನ್ನನ್ನು ಒಬ್ಬ ಪೂರ್ಣ ಮಾನವನನ್ನಾಗಿ ಮಾಡಿದ ಅಲ್ಲಾಹನನ್ನು ನೀನು ನಿಷೇಧಿಸುವೆಯಾ?

قَالَ لَهُۥ صَاحِبُهُۥ وَهُوَ يُحَاوِرُهُۥٓ أَكَفَرْتَ
بِٱلَّذِي خَلَقَكَ مِن تُرَابٍ ثُمَّ مِن نُّطْفَةٍ ثُمَّ
سَوَّىٰكَ رَجُلًا ٣٧

38. ಆದರೆ ಆ ಅಲ್ಲಾಹನೇ ನನ್ನ ಪರಿಪಾಲಕನೆಂದು ನಾನು ದೃಢವಾಗಿ ನಂಬುತ್ತೇನೆ. ನಾನು ನನ್ನ ಪರಿಪಾಲಕನೊಡನೆ ಯಾರನ್ನೂ ಸಹಭಾಗಿಯಾಗಿ ಮಾಡುವುದಿಲ್ಲ.

لَّٰكِنَّا۠ هُوَ ٱللَّهُ رَبِّي وَلَآ أُشْرِكُ بِرَبِّيٓ أَحَدًا ٣٨

39. ನೀನು ನಿನ್ನ ತೋಟವನ್ನು ಪ್ರವೇಶಿಸುವಾಗ, "ಇವೆಲ್ಲವೂ ಅಲ್ಲಾಹು ಇಚ್ಛಿಸಿದ್ದು. ಅಲ್ಲಾಹನಿಂದಲ್ಲದೆ ಯಾವುದೇ ಶಕ್ತಿಯಿಲ್ಲ" ಎಂದು ಏಕೆ ಹೇಳಲಿಲ್ಲ? ಆಸ್ತಿ ಮತ್ತು ಸಂತಾನದಲ್ಲಿ ನೀನು ನನ್ನನ್ನು ನಿನಗಿಂತಲೂ ಕೀಳಾಗಿ ಕಾಣುತ್ತಿದ್ದರೆ.

وَلَوْلَآ إِذْ دَخَلْتَ جَنَّتَكَ قُلْتَ مَا شَآءَ ٱللَّهُ
لَا قُوَّةَ إِلَّا بِٱللَّهِ إِن تَرَنِ أَنَا۠ أَقَلَّ مِنكَ مَالًا
وَوَلَدًا ٣٩

40. ನನ್ನ ಪರಿಪಾಲಕನು (ಅಲ್ಲಾಹು) ನಿನ್ನ ತೋಟಕ್ಕಿಂತಲೂ ಶ್ರೇ-ಷ್ಠವಾದುದನ್ನು ನನಗೆ ನೀಡಬಹುದು ಮತ್ತು ನಿನ್ನ ತೋಟಕ್ಕೆ ಆಕಾಶದಿಂದ ಶಿಕ್ಷೆಯನ್ನು ಇಳಿಸಿ ಅದನ್ನು ಜಾರುಭೂಮಿಯಾಗಿ ಪರಿವರ್ತಿಸಬಹುದು.

فَعَسَىٰ رَبِّيٓ أَن يُؤْتِيَنِ خَيْرًا مِّن جَنَّتِكَ
وَيُرْسِلَ عَلَيْهَا حُسْبَانًا مِّنَ ٱلسَّمَآءِ فَتُصْبِحَ
صَعِيدًا زَلَقًا ٤٠

41. ಅಥವಾ ಅದರ ನೀರನ್ನು ಆಳಕ್ಕೆ ಇಂಗಿಸಬಹುದು. ಆಗ ಅದನ್ನು ಹುಡುಕಿ ತರಲು ನಿನಗೆ ಸಾಧ್ಯವಾಗದು."

أَوْ يُصْبِحَ مَآؤُهَا غَوْرًا فَلَن تَسْتَطِيعَ
لَهُۥ طَلَبًا ٤١

42. ಅವನ ಎಲ್ಲಾ ಫಲಗಳು ಆವರಿಸಲ್ಪಟ್ಟಿತು (ಸಂಪೂರ್ಣ ನಾಶವಾಯಿತು). ಆಗ ಅವನು ಅದಕ್ಕೆ ಮಾಡಿದ ಖರ್ಚುಗಳಿಗಾಗಿ (ಹತಾಶೆಯಿಂದ) ಕೈಗಳನ್ನು ತಿರುಗಿಸತೊಡ-ಗಿದನು. ಆ ತೋಟಗಳು ಸಂಪೂರ್ಣವಾಗಿ ಮಗುಚಿ ಬಿದ್ದಿದ್ದವು. ಅವನು ಹೇಳಿದನು: "ನಾನು ನನ್ನ ಪರಿಪಾಲಕನೊಡನೆ (ಅಲ್ಲಾಹನೊಡನೆ) ಸಹಭಾಗಿತ್ವ (ಶಿರ್ಕ್) ಮಾಡದಿರುತ್ತಿದ್ದರೆ ಎಷ್ಟು ಚೆನ್ನಾಗಿತ್ತು!"

وَأُحِيطَ بِثَمَرِهِۦ فَأَصْبَحَ يُقَلِّبُ كَفَّيْهِ عَلَىٰ مَآ
أَنفَقَ فِيهَا وَهِيَ خَاوِيَةٌ عَلَىٰ عُرُوشِهَا وَيَقُولُ
يَٰلَيْتَنِي لَمْ أُشْرِكْ بِرَبِّيٓ أَحَدًا ٤٢

**43.** ಅಲ್ಲಾಹನಿಗೆ ವಿರುದ್ಧವಾಗಿ ಅವನ ರಕ್ಷಣೆ ಮಾಡಲು ಯಾವುದೇ ತಂಡವೂ ಬರಲಿಲ್ಲ. ಅವನಿಗೆ ಸ್ವಯಂ ರಕ್ಷಣೆ ಪಡೆಯಲೂ ಸಾಧ್ಯವಾಗಲಿಲ್ಲ.

وَلَمۡ تَكُن لَّهُۥ فِئَةٞ يَنصُرُونَهُۥ مِن دُونِ ٱللَّهِ
وَمَا كَانَ مُنتَصِرًا ٤٣

**44.** ಅಲ್ಲಿ ಅಧಿಕಾರವು ಸಂಪೂರ್ಣವಾಗಿ ಅಲ್ಲಾಹನದ್ದೆಂದು (ಸಾಬೀತಾಗಿದೆ). ಅವನು ಪ್ರತಿಫಲ ನೀಡುವುದರಲ್ಲಿ ಅತ್ಯುತ್ತಮ-ನಾಗಿದ್ದಾನೆ ಮತ್ತು ಅಂತಿಮ ಫಲಿತಾಂಶ ನೀಡುವುದರಲ್ಲೂ ಅತ್ಯುತ್ತಮನಾಗಿದ್ದಾನೆ.

هُنَالِكَ ٱلۡوَلَٰيَةُ لِلَّهِ ٱلۡحَقِّۚ هُوَ خَيۡرٞ ثَوَابٗا وَخَيۡرٌ
عُقۡبٗا ٤٤

**45.** (ಪ್ರವಾದಿಯವರೇ) ಅವರಿಗೆ ಇಹಲೋಕದ ಬಗ್ಗೆ ಒಂದು ಉದಾಹರಣೆಯನ್ನು ತಿಳಿಸಿಕೊಡಿ. ಅದು (ಇಹಲೋಕವು) ನಾವು ಆಕಾಶದಿಂದ ಸುರಿಸಿದ ಮಳೆಯಂತೆ. ಭೂಮಿಯ ಸಸ್ಯಗಳು ಅದರೊಂದಿಗೆ ಬೆರೆತು ಬೆಳೆದವು. ನಂತರ ಅವು ಗಾಳಿ ಬೀಸಿದರೆ ಹಾರಿ ಹೋಗುವ ಧೂಳಿಯಂತಾದವು. ಅಲ್ಲಾಹು ಎಲ್ಲಾ ವಿಷಯಗಳಲ್ಲೂ ಸರ್ವಶಕ್ತನಾಗಿದ್ದಾನೆ.

وَٱضۡرِبۡ لَهُم مَّثَلَ ٱلۡحَيَوٰةِ ٱلدُّنۡيَا كَمَآءٍ أَنزَلۡنَٰهُ
مِنَ ٱلسَّمَآءِ فَٱخۡتَلَطَ بِهِۦ نَبَاتُ ٱلۡأَرۡضِ
فَأَصۡبَحَ هَشِيمٗا تَذۡرُوهُ ٱلرِّيَٰحُۗ وَكَانَ ٱللَّهُ عَلَىٰ
كُلِّ شَيۡءٖ مُّقۡتَدِرًا ٤٥

**46.** ಆಸ್ತಿ ಮತ್ತು ಸಂತಾನಗಳು ಇಹಲೋಕ ಜೀವನದ ಅಲಂಕಾರಗಳಾಗಿವೆ. ಆದರೆ ಬಾಕಿಯಾಗುವ ಸತ್ಕರ್ಮಗಳು ತಮ್ಮ ಪರಿಪಾಲಕನ (ಅಲ್ಲಾಹನ) ದೃಷ್ಟಿಯಲ್ಲಿ ಅತ್ಯುತ್ತಮ ಪ್ರತಿಫಲವನ್ನು ಮತ್ತು ಅತ್ಯುತ್ತಮ ಭರವಸೆಯನ್ನು ಹೊಂದಿವೆ.

ٱلۡمَالُ وَٱلۡبَنُونَ زِينَةُ ٱلۡحَيَوٰةِ ٱلدُّنۡيَاۖ
وَٱلۡبَٰقِيَٰتُ ٱلصَّٰلِحَٰتُ خَيۡرٌ عِندَ رَبِّكَ ثَوَابٗا
وَخَيۡرٌ أَمَلٗا ٤٦

**47.** ನಾವು ಪರ್ವತಗಳನ್ನು ಚಲಿಸುವಂತೆ ಮಾಡುವ ಮತ್ತು ಭೂಮಿಯನ್ನು ನೀವು ಸಮತಟ್ಟಾದ ಬಯಲಿನಂತೆ ಕಾಣುವ ಹಾಗೂ ನಾವು ಅವರಲ್ಲಿ (ಮನುಷ್ಯರಲ್ಲಿ) ಒಬ್ಬರನ್ನೂ ಬಿಡದೆ ಒಟ್ಟುಗೂಡಿಸುವ ದಿನ!

وَيَوۡمَ نُسَيِّرُ ٱلۡجِبَالَ وَتَرَى ٱلۡأَرۡضَ بَارِزَةٗ
وَحَشَرۡنَٰهُمۡ فَلَمۡ نُغَادِرۡ مِنۡهُمۡ أَحَدٗا ٤٧

**48.** ಅವರನ್ನು ತಮ್ಮ ಪರಿಪಾಲಕನ (ಅಲ್ಲಾಹನ) ಮುಂದೆ ಸಾಲು ಸಾಲಾಗಿ ಪ್ರದರ್ಶಿಸಲಾಗುವುದು. (ಅಲ್ಲಾಹು ಹೇಳುವನು): "ನಾವು ನಿಮ್ಮನ್ನು ಪ್ರಥಮ ಬಾರಿ ಸೃಷ್ಟಿಸಿದಂತೆಯೇ ನೀವು ನಮ್ಮ ಬಳಿಗೆ ಬಂದಿದ್ದೀರಿ. ನಾವು ನಿಮಗೆ ಒಂದು ಸಮಯವನ್ನು ಮೀಸಲಿಡುವುದಿಲ್ಲ ಎಂದು ನೀವು ವಾದಿಸುತ್ತಿದ್ದಿರಿ."

وَعُرِضُواْ عَلَىٰ رَبِّكَ صَفّٗا لَّقَدۡ جِئۡتُمُونَا كَمَا
خَلَقۡنَٰكُمۡ أَوَّلَ مَرَّةِۭۚ بَلۡ زَعَمۡتُمۡ أَلَّن نَّجۡعَلَ
لَكُم مَّوۡعِدٗا ٤٨

**49.** ಕರ್ಮ ಪುಸ್ತಕವನ್ನು ಇಡಲಾಗುವುದು. ಆಗ ಅಪರಾಧಿಗಳು ಅದರಲ್ಲಿರುವ ಉಲ್ಲೇಖಗಳನ್ನು ನೋಡಿ ಭಯದಿಂದ ನಡುಗುವುದನ್ನು ನೀವು ನೋಡುವಿರಿ. ಅವರು ಹೇಳುವರು: "ಅಯ್ಯೋ ನಮ್ಮ ದುರದೃಷ್ಟವೇ! ಇದೆಂತಹ ಪುಸ್ತಕ? ಇದರಲ್ಲಿ ಚಿಕ್ಕ ಮತ್ತು ದೊಡ್ಡದಾದ ಯಾವುದನ್ನೂ ದಾಖಲಿಸದೆ

وَوُضِعَ ٱلۡكِتَٰبُ فَتَرَى ٱلۡمُجۡرِمِينَ مُشۡفِقِينَ
مِمَّا فِيهِ وَيَقُولُونَ يَٰوَيۡلَتَنَا مَالِ هَٰذَا
ٱلۡكِتَٰبِ لَا يُغَادِرُ صَغِيرَةٗ وَلَا كَبِيرَةً
إِلَّآ أَحۡصَىٰهَاۚ وَوَجَدُواْ مَا عَمِلُواْ حَاضِرٗاۗ

وَلَا يَظْلِمُ رَبُّكَ أَحَدًا ﴿٤٩﴾

ಬಿಟ್ಟಿಲ್ಲವಲ್ಲ!" ಅವರು ಮಾಡಿದ ಎಲ್ಲಾ ಕರ್ಮಗಳನ್ನೂ ಅವರು ಅದರಲ್ಲಿ ದಾಖಲಾಗಿರುವುದನ್ನು ಕಾಣುವರು. ನಿಮ್ಮ ಪರಿಪಾಲಕನು (ಅಲ್ಲಾಹು) ಯಾರಿಗೂ ಅನ್ಯಾಯ ಮಾಡುವವನಲ್ಲ.

---

وَإِذْ قُلْنَا لِلْمَلَٰٓئِكَةِ ٱسْجُدُوا۟ لِءَادَمَ فَسَجَدُوٓا۟ إِلَّآ إِبْلِيسَ كَانَ مِنَ ٱلْجِنِّ فَفَسَقَ عَنْ أَمْرِ رَبِّهِۦٓ ۗ أَفَتَتَّخِذُونَهُۥ وَذُرِّيَّتَهُۥٓ أَوْلِيَآءَ مِن دُونِى وَهُمْ لَكُمْ عَدُوٌّۢ ۚ بِئْسَ لِلظَّٰلِمِينَ بَدَلًا ﴿٥٠﴾

50. ನಾವು ದೇವದೂತರುಗಳೊಡನೆ, "ನೀವು ಆದಮರಿಗೆ ಸಾಷ್ಟಾಂಗ ಮಾಡಿರಿ" ಎಂದು ಹೇಳಿದ ಸಂದರ್ಭ. ಅವರು ಸಾಷ್ಟಾಂಗ ಮಾಡಿದರು. ಇಬ್ಲೀಸನ ಹೊರತು. ಅವನು ಜಿನ್ನ್‌ಗಳಲ್ಲಿ ಸೇರಿದ್ದನು. ಅವನು ತನ್ನ ಪರಿಪಾಲಕನ (ಅಲ್ಲಾಹನ) ಆಜ್ಞೆಯನ್ನು ಉಲ್ಲಂಘಿಸಿದನು. ಹೀಗಿರುವಾಗ, ನೀವು ನನ್ನನ್ನು ಬಿಟ್ಟು ಅವನನ್ನು ಮತ್ತು ಅವನ ಸಂತಾನವನ್ನು ಮಿತ್ರರಾಗಿ ಸ್ವೀಕರಿಸುವಿರಾ? ವಾಸ್ತವವಾಗಿ ಅವರು ನಿಮ್ಮ ವೈರಿಗಳಾಗಿದ್ದೂ ಸಹ. ಅಕ್ರಮಿಗಳಿಗೆ ಬದಲಿಯಾಗಿ ಸಿಕ್ಕಿದ್ದು ಬಹಳ ನಿಕೃಷ್ಟವಾಗಿದೆ.

---

مَّآ أَشْهَدتُّهُمْ خَلْقَ ٱلسَّمَٰوَٰتِ وَٱلْأَرْضِ وَلَا خَلْقَ أَنفُسِهِمْ وَمَا كُنتُ مُتَّخِذَ ٱلْمُضِلِّينَ عَضُدًا ﴿٥١﴾

51. ನಾನು ಭೂಮ್ಯಾಕಾಶಗಳ ಸೃಷ್ಟಿಸುವಾಗ ಅಥವಾ ಸ್ವತಃ ಅವರನ್ನೇ ಸೃಷ್ಟಿಸುವಾಗ ಅವರನ್ನು (ಶೈತಾನರನ್ನು) ಅದಕ್ಕೆ ಸಾಕ್ಷಿಗಳನ್ನಾಗಿ ಮಾಡಲಿಲ್ಲ. ದಾರಿತಪ್ಪಿಸುವವರನ್ನು ನಾನು ಸಹಾಯಕರನ್ನಾಗಿ ಮಾಡುವುದೂ ಇಲ್ಲ.

---

وَيَوْمَ يَقُولُ نَادُوا۟ شُرَكَآءِىَ ٱلَّذِينَ زَعَمْتُمْ فَدَعَوْهُمْ فَلَمْ يَسْتَجِيبُوا۟ لَهُمْ وَجَعَلْنَا بَيْنَهُم مَّوْبِقًا ﴿٥٢﴾

52. "ನೀವು ನನ್ನ ಸಹಭಾಗಿಗಳೆಂದು ವಾದಿಸುತ್ತಿದ್ದ ನಿಮ್ಮ ದೇವರುಗಳನ್ನು ಕರೆಯಿರಿ" ಎಂದು ಅಲ್ಲಾಹು ಆದೇಶಿಸುವ ದಿನ. ಅವರು ಆ ದೇವರುಗಳನ್ನು ಕರೆಯುವರು. ಆದರೆ ಅವರು ಇವರಿಗೆ ಉತ್ತರ ನೀಡುವುದಿಲ್ಲ. ನಾವು ಅವರ ನಡುವೆ ವಿನಾಶದ ಕಂದಕವನ್ನು ನಿರ್ಮಿಸುವೆವು.

---

وَرَءَا ٱلْمُجْرِمُونَ ٱلنَّارَ فَظَنُّوٓا۟ أَنَّهُم مُّوَاقِعُوهَا وَلَمْ يَجِدُوا۟ عَنْهَا مَصْرِفًا ﴿٥٣﴾

53. ಅಪರಾಧಿಗಳು ನರಕವನ್ನು ಕಣ್ಣಾರೆ ನೋಡುವರು. ಅವರು ಅದರಲ್ಲಿ ಬೀಳುವರೆಂದು ಅವರಿಗೆ ಖಾತ್ರಿಯಾಗುವುದು. ಅದರಿಂದ ತಪ್ಪಿಸಿಕೊಳ್ಳುವ ಯಾವುದೇ ಮಾರ್ಗವನ್ನು ಅವರು ಕಾಣಲಾರರು.

---

وَلَقَدْ صَرَّفْنَا فِى هَٰذَا ٱلْقُرْءَانِ لِلنَّاسِ مِن كُلِّ مَثَلٍ ۚ وَكَانَ ٱلْإِنسَٰنُ أَكْثَرَ شَىْءٍ جَدَلًا ﴿٥٤﴾

54. ನಿಶ್ಚಯವಾಗಿಯೂ ನಾವು ಈ ಕುರ್‌ಆನಿನಲ್ಲಿ ಮನುಷ್ಯರಿಗೆ ಎಲ್ಲಾ ರೀತಿಯ ಉದಾಹರಣೆಗಳನ್ನು ವಿವರಿಸಿದ್ದೇವೆ. ವಾಸ್ತವವಾಗಿ, ಮನುಷ್ಯನು ಅತಿ ಹೆಚ್ಚು ತರ್ಕಿಸುವವನಾಗಿದ್ದಾನೆ.

---

وَمَا مَنَعَ ٱلنَّاسَ أَن يُؤْمِنُوٓا۟ إِذْ جَآءَهُمُ ٱلْهُدَىٰ وَيَسْتَغْفِرُوا۟ رَبَّهُمْ إِلَّآ أَن تَأْتِيَهُمْ سُنَّةُ ٱلْأَوَّلِينَ

55. ಜನರ ಬಳಿಗೆ ಸನ್ಮಾರ್ಗವು ಬಂದಾಗ ಅವರು ಅದರಲ್ಲಿ ವಿಶ್ವಾಸ-ವಿಡದಿರಲು ಮತ್ತು ತಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ಕ್ಷಮೆ-ಯಾಚಿಸದಿರಲು ಅವರಿಗೆ ತಡೆಯಾಗಿರುವುದು, ಪೂರ್ವಿಕರ

أَوْ يَأْتِيَهُمُ ٱلْعَذَابُ قُبُلًا ﴿٥٥﴾

ವಿಷಯದಲ್ಲಿ ಕೈಗೊಳ್ಳಲಾದ ಅದೇ ಕ್ರಮವು ನಮಗೂ ಬರಬೇಕು ಅಥವಾ ಶಿಕ್ಷೆಯನ್ನು ನಮ್ಮ ಕಣ್ಣ ಮುಂದೆ ತರಬೇಕು ಎಂಬುದು ಮಾತ್ರವಾಗಿತ್ತು.

---

وَمَا نُرْسِلُ ٱلْمُرْسَلِينَ إِلَّا مُبَشِّرِينَ وَمُنذِرِينَ ۚ وَيُجَٰدِلُ ٱلَّذِينَ كَفَرُوا۟ بِٱلْبَٰطِلِ لِيُدْحِضُوا۟ بِهِ ٱلْحَقَّ ۖ وَٱتَّخَذُوٓا۟ ءَايَٰتِى وَمَآ أُنذِرُوا۟ هُزُوًا ﴿٥٦﴾

56. ನಾವು ಸಂದೇಶವಾಹಕರುಗಳನ್ನು ಕಳುಹಿಸುವುದು ಸುವಾರ್ತೆ ತಿಳಿಸಲು ಮತ್ತು ಎಚ್ಚರಿಕೆ ನೀಡಲು ಮಾತ್ರ. ಸತ್ಯನಿಷೇಧಿಗಳು ಅಸತ್ಯದ ಆಧಾರದಲ್ಲಿ ತರ್ಕಿಸುತ್ತಾರೆ ಮತ್ತು ಅದರ ಮೂಲಕ ಸತ್ಯವನ್ನು ನಾಶ ಮಾಡಬಹುದೆಂದು ಭಾವಿಸುತ್ತಾರೆ. ಅವರು ನನ್ನ ವಚನಗಳನ್ನು ಮತ್ತು ಅವರಿಗೆ ನೀಡಲಾದ ಎಚ್ಚರಿಕೆಗಳನ್ನು ತಮಾಷೆಯಾಗಿ ಸ್ವೀಕರಿಸುತ್ತಾರೆ.

---

وَمَنْ أَظْلَمُ مِمَّن ذُكِّرَ بِـَٔايَٰتِ رَبِّهِۦ فَأَعْرَضَ عَنْهَا وَنَسِىَ مَا قَدَّمَتْ يَدَاهُ ۚ إِنَّا جَعَلْنَا عَلَىٰ قُلُوبِهِمْ أَكِنَّةً أَن يَفْقَهُوهُ وَفِىٓ ءَاذَانِهِمْ وَقْرًا ۖ وَإِن تَدْعُهُمْ إِلَى ٱلْهُدَىٰ فَلَن يَهْتَدُوٓا۟ إِذًا أَبَدًا ﴿٥٧﴾

57. ತನ್ನ ಪರಿಪಾಲಕನ (ಅಲ್ಲಾಹನ) ವಚನಗಳ ಮೂಲಕ ಉಪದೇಶ ನೀಡಲಾದ ಬಳಿಕವೂ ಅದನ್ನು ಲೆಕ್ಕಿಸದವನು ಮತ್ತು ತನ್ನ ಕೈಗಳು ಮುಂದಕ್ಕೆ ಕಳುಹಿಸಿದ ದುಷ್ಕರ್ಮಗಳನ್ನು ಮರೆತವನಿಗಿಂತಲೂ ದೊಡ್ಡ ಅಕ್ರಮಿ ಯಾರು? ಅವರು ಅದನ್ನು ಅರ್ಥಮಾಡಿಕೊಳ್ಳದಂತೆ ನಾವು ಅವರ ಹೃದಯಗಳಿಗೆ ಪರದೆಯನ್ನು ಹಾಕಿದ್ದೇವೆ ಮತ್ತು ಅವರ ಕಿವಿಗಳಿಗೆ ಕಿವುಡುತನವಿದೆ. ನೀವು ಅವರನ್ನು ಸನ್ಮಾರ್ಗಕ್ಕೆ ಕರೆದರೂ ಅವರು ಎಂದಿಗೂ ಸನ್ಮಾರ್ಗವನ್ನು ಸ್ವೀಕರಿಸುವುದಿಲ್ಲ.

---

وَرَبُّكَ ٱلْغَفُورُ ذُو ٱلرَّحْمَةِ ۖ لَوْ يُؤَاخِذُهُم بِمَا كَسَبُوا۟ لَعَجَّلَ لَهُمُ ٱلْعَذَابَ ۚ بَل لَّهُم مَّوْعِدٌ لَّن يَجِدُوا۟ مِن دُونِهِۦ مَوْئِلًا ﴿٥٨﴾

58. ನಿಮ್ಮ ಪರಿಪಾಲಕನು (ಅಲ್ಲಾಹು) ಕ್ಷಮಾಶೀಲನು ಮತ್ತು ಪರಮ ದಯಾಳುವಾಗಿದ್ದಾನೆ. ಅವರು ಮಾಡಿದ ದುಷ್ಕರ್ಮಗಳಿಗಾಗಿ ಅವನು ಅವರನ್ನು ಹಿಡಿಯುತ್ತಿದ್ದರೆ, ಅವನು ಅವರಿಗೆ ಶಿಕ್ಷೆಯನ್ನು ತ್ವರಿತಗೊಳಿಸುತ್ತಿದ್ದನು. ಆದರೆ ಅವರಿಗೆ ಒಂದು ನಿಶ್ಚಿತ ಅವಧಿಯಿದೆ. ಅದರಿಂದ ತಪ್ಪಿಸಿಕೊಳ್ಳುವ ಯಾವುದೇ ಸ್ಥಳವನ್ನೂ ಅವರು ಕಾಣಲಾರರು.

---

وَتِلْكَ ٱلْقُرَىٰٓ أَهْلَكْنَٰهُمْ لَمَّا ظَلَمُوا۟ وَجَعَلْنَا لِمَهْلِكِهِم مَّوْعِدًا ﴿٥٩﴾

59. ಆ ಊರುಗಳ ಜನರು ಅಕ್ರಮವೆಸಗಿದಾಗ ನಾವು ಅವರನ್ನು ನಾಶ ಮಾಡಿದೆವು. ನಾವು ಅವರ ನಾಶಕ್ಕೆ ಒಂದು ನಿಶ್ಚಿತ ಅವಧಿಯನ್ನೂ ಇಟ್ಟಿದ್ದೆವು.

---

وَإِذْ قَالَ مُوسَىٰ لِفَتَىٰهُ لَآ أَبْرَحُ حَتَّىٰٓ أَبْلُغَ مَجْمَعَ ٱلْبَحْرَيْنِ أَوْ أَمْضِىَ حُقُبًا ﴿٦٠﴾

60. ಮೂಸಾ ತನ್ನ ಸೇವಕನೊಡನೆ ಹೇಳಿದ ಸಂದರ್ಭ: “ಎರಡು ಕಡಲುಗಳ ಸಂಗಮ ಸ್ಥಳವನ್ನು ತಲುಪುವ ತನಕ ನಾನು ನಡೆಯುತ್ತಲೇ ಇರುವೆನು. ಅದಕ್ಕಾಗಿ ದೀರ್ಘ ಸಮಯ ಪ್ರಯಾಣ ಮಾಡಬೇಕಾಗಿ ಬಂದರೂ ಸಹ.”[1]

---

[1] ಒಮ್ಮೆ ಮೂಸಾರೊಡನೆ (ಅವರ ಮೇಲೆ ಶಾಂತಿಯಿರಲಿ) ಒಬ್ಬ ವ್ಯಕ್ತಿ ಪ್ರಶ್ನೆ ಕೇಳಿದಾಗ ಮೂಸಾ (ಅವರ ಮೇಲೆ ಶಾಂತಿಯಿರಲಿ) ಹೇಳಿದರು: “ಈಗ ಜಗತ್ತಿನಲ್ಲಿ ನನಗಿಂತಲೂ ಹೆಚ್ಚು ಜ್ಞಾನವಿರುವವರು ಯಾರೂ ಇಲ್ಲ.” ಅವರ ಈ ಮಾತು ಅಲ್ಲಾಹನಿಗೆ ಇಷ್ಟವಾಗಲಿಲ್ಲ. ಅಲ್ಲಾಹು

61. ನಂತರ ಅವರು ಎರಡು ಕಡಲುಗಳ ಸಂಗಮ ಸ್ಥಳವನ್ನು ತಲುಪಿದಾಗ ತಮ್ಮಲ್ಲಿದ್ದ ಮೀನನ್ನು ಮರೆತುಬಿಟ್ಟರು. ಅದು ಸಮುದ್ರಕ್ಕೆ ನೆಗೆದು ತಾನು ಸಾಗಿದ ಹಾದಿಯನ್ನು ಒಂದು ಸುರಂಗದಂತೆ ಮಾಡಿತು.

فَلَمَّا بَلَغَا مَجۡمَعَ بَيۡنِهِمَا نَسِيَا حُوتَهُمَا فَٱتَّخَذَ
سَبِيلَهُۥ فِي ٱلۡبَحۡرِ سَرَبٗا ٦١

62. ಅವರು ಆ ಸ್ಥಳದಿಂದ ಮುಂದೆ ಸಾಗಿದಾಗ ಮೂಸಾ ತನ್ನ ಸೇವಕನೊಡನೆ ಹೇಳಿದರು: "ನಮ್ಮ ಉಪಹಾರವನ್ನು ತೆಗೆದುಕೊಂಡು ಬಾ. ನಮ್ಮ ಈ ಪ್ರಯಾಣದಿಂದ ನಮಗೆ ಬಹಳ ಸುಸ್ತಾಗಿದೆ."

فَلَمَّا جَاوَزَا قَالَ لِفَتَىٰهُ ءَاتِنَا غَدَآءَنَا لَقَدۡ لَقِينَا
مِن سَفَرِنَا هَٰذَا نَصَبٗا ٦٢

63. ಸೇವಕ ಹೇಳಿದನು: "ನಿಮಗೆ ಗೊತ್ತೇ? ನಾವು ಆ ಬಂಡೆಯಲ್ಲಿ ವಿಶ್ರಾಂತಿ ಪಡೆಯುತ್ತಿದ್ದಾಗ ನಾನು ಆ ಮೀನನ್ನು ಮರೆತೇ ಬಿಟ್ಟಿದ್ದೆ. ನಾನು ಅದರ ಬಗ್ಗೆ ಮಾತನಾಡಬಾರದೆಂದು ಶೈತಾನನೇ ನನಗೆ ಅದನ್ನು ಮರೆಯುವಂತೆ ಮಾಡಿದ್ದನು. ಅದು ಸಮುದ್ರದಲ್ಲಿ ತಾನು ಸಾಗಿದ ಹಾದಿಯನ್ನು ಒಂದು ವಿಚಿತ್ರವನ್ನಾಗಿ ಮಾಡಿತ್ತು."

قَالَ أَرَءَيۡتَ إِذۡ أَوَيۡنَآ إِلَى ٱلصَّخۡرَةِ فَإِنِّي نَسِيتُ
ٱلۡحُوتَ وَمَآ أَنسَىٰنِيهُ إِلَّا ٱلشَّيۡطَٰنُ أَنۡ أَذۡكُرَهُۥۚ
وَٱتَّخَذَ سَبِيلَهُۥ فِي ٱلۡبَحۡرِ عَجَبٗا ٦٣

64. ಮೂಸಾ ಹೇಳಿದರು: "ನಾವು ಹುಡುಕುತ್ತಿದ್ದದ್ದು ಅದನ್ನೇ!" ತಕ್ಷಣ ಅವರಿಬ್ಬರೂ ತಮ್ಮ ಹೆಜ್ಜೆಗಳನ್ನು ಹಿಂಬಾಲಿಸುತ್ತಾ ಮರಳಿದರು.

قَالَ ذَٰلِكَ مَا كُنَّا نَبۡغِۚ فَٱرۡتَدَّا عَلَىٰٓ ءَاثَارِهِمَا
قَصَصٗا ٦٤

65. ಅಲ್ಲಿ ಅವರು ನಮ್ಮ ದಾಸರಲ್ಲಿ ಒಬ್ಬರನ್ನು ಕಂಡರು. ಅವರಿಗೆ ನಾವು ನಮ್ಮ ಕಡೆಯ ದಯೆಯನ್ನು ನೀಡಿದ್ದೆವು. ಅವರಿಗೆ ನಮ್ಮ ಕಡೆಯ ಜ್ಞಾನವನ್ನೂ ಕಲಿಸಿದ್ದೆವು.

فَوَجَدَا عَبۡدٗا مِّنۡ عِبَادِنَآ ءَاتَيۡنَٰهُ رَحۡمَةٗ مِّنۡ
عِندِنَا وَعَلَّمۡنَٰهُ مِن لَّدُنَّا عِلۡمٗا ٦٥

66. ಮೂಸಾ ಅವರೊಡನೆ ಕೇಳಿದರು: "ನಾನು ತಮ್ಮನ್ನು ಹಿಂಬಾಲಿಸಿದರೆ ತಮಗೆ ಕಲಿಸಿಕೊಡಲಾದ ಸುಜ್ಞಾನದಿಂದ ತಾವು ನನಗೆ ಸ್ವಲ್ಪ ಕಲಿಸಿಕೊಡುವಿರಾ?"

قَالَ لَهُۥ مُوسَىٰ هَلۡ أَتَّبِعُكَ عَلَىٰٓ أَن تُعَلِّمَنِ مِمَّا
عُلِّمۡتَ رُشۡدٗا ٦٦

67. ಆ ವ್ಯಕ್ತಿ ಹೇಳಿದರು: "ನನ್ನ ಜೊತೆ ತಾಳ್ಮೆಯಿಂದಿರಲು ನಿಮಗೆ ಖಂಡಿತ ಸಾಧ್ಯವಿಲ್ಲ.

قَالَ إِنَّكَ لَن تَسۡتَطِيعَ مَعِيَ صَبۡرٗا ٦٧

68. ನಿಮಗೆ ಸೂಕ್ಷ್ಮವಾಗಿ ತಿಳಿಯಲು ಸಾಧ್ಯವಿಲ್ಲದ ವಿಷಯದಲ್ಲಿ ನೀವು ತಾಳ್ಮೆಯಿಂದಿರುವುದಾದರೂ ಹೇಗೆ?"

وَكَيۡفَ تَصۡبِرُ عَلَىٰ مَا لَمۡ تُحِطۡ بِهِۦ خُبۡرٗا ٦٨

69. ಮೂಸಾ ಹೇಳಿದರು: "ಅಲ್ಲಾಹು ಬಯಸಿದರೆ ತಾವು ನನ್ನನ್ನು ತಾಳ್ಮೆಯುಳ್ಳವನಾಗಿ ಕಾಣುವಿರಿ. ತಮ್ಮ ಯಾವುದೇ ಆಜ್ಞೆಯನ್ನು

قَالَ سَتَجِدُنِيٓ إِن شَآءَ ٱللَّهُ صَابِرٗا وَلَآ أَعۡصِي
لَكَ أَمۡرٗا ٦٩

---

ದೇವವಾಣಿಯ ಮೂಲಕ ಮೂಸಾರೊಡನೆ (ಅವರ ಮೇಲೆ ಶಾಂತಿಯಿರಲಿ) ಹೇಳಿದನು: "ನಿಮಗಿಂತ ಹೆಚ್ಚು ಜ್ಞಾನವಿರುವ ವ್ಯಕ್ತಿಯಿದ್ದಾರೆ." ಮೂಸಾ ಹೇಳಿದರು: "ಅವರನ್ನು ನನಗೆ ತೋರಿಸು. ನಾನು ಅವರನ್ನು ಭೇಟಿಯಾಗಬೇಕು." ಅಲ್ಲಾಹು ಹೇಳಿದನು: "ಅವರು ಎರಡು ಕಡಲುಗಳ ಸಂಗಮ ಸ್ಥಳದಲ್ಲಿದ್ದಾರೆ." ಅಲ್ಲಾಹು ತಿಳಿಸಿದಂತೆ ಮೂಸಾ (ಅವರ ಮೇಲೆ ಶಾಂತಿಯಿರಲಿ) ಒಂದು ಮೀನನ್ನು ತೆಗೆದುಕೊಂಡು ಹೋದರು. ಅದು ಬುಟ್ಟಿಯಿಂದ ನೆಗೆದು ಅಪ್ರತ್ಯಕ್ಷವಾಗುವ ಸ್ಥಳದಲ್ಲಿ ಆ ವ್ಯಕ್ತಿ ಸಿಗುತ್ತಾರೆಂದು ಅಲ್ಲಾಹು ದೇವವಾಣಿಯ ಮೂಲಕ ತಿಳಿಸಿದ್ದನು.

ನಾನು ಉಲ್ಲಂಘಿಸುವುದಿಲ್ಲ."

---

70. ಆ ವ್ಯಕ್ತಿ ಹೇಳಿದರು: "ನೀವು ನನ್ನನ್ನು ಹಿಂಬಾಲಿಸುವುದಾದರೆ ಯಾವುದೇ ವಿಷಯದ ಬಗ್ಗೆಯೂ ನನ್ನೊಡನೆ ಪ್ರಶ್ನಿಸಬಾರದು. ನಾನು ಅದರ ಬಗ್ಗೆ ನಿಮಗೆ ಮಾಹಿತಿ ನೀಡುವ ತನಕ."

قَالَ فَإِنِ ٱتَّبَعۡتَنِي فَلَا تَسۡـَٔلۡنِي عَن شَيۡءٍ حَتَّىٰٓ أُحۡدِثَ لَكَ مِنۡهُ ذِكۡرٗا ﴿٧٠﴾

---

71. ಅವರಿಬ್ಬರೂ ಹೊರಟರು. ಎಲ್ಲಿಯವರೆಗೆಂದರೆ, ಅವರಿಬ್ಬರು ಒಂದು ನಾವೆಯನ್ನೇರಿದಾಗ ಆ ವ್ಯಕ್ತಿ ನಾವೆಯ ಹಲಗೆಯನ್ನು ಒಡೆದು ತೂತು ಮಾಡಿದರು. ಮೂಸಾ ಹೇಳಿದರು: "ಏನಿದು? ಅದರಲ್ಲಿರುವ ಜನರನ್ನು ಮುಳುಗಿಸಿ ಬಿಡಲು ತೂತು ಮಾಡುತ್ತಿದ್ದೀರಾ? ನಿಜಕ್ಕೂ ನೀವು ಒಂದು ಘೋರ ಕೆಲಸವನ್ನು ಮಾಡಿದ್ದೀರಿ!"

فَٱنطَلَقَا حَتَّىٰٓ إِذَا رَكِبَا فِي ٱلسَّفِينَةِ خَرَقَهَاۖ قَالَ أَخَرَقۡتَهَا لِتُغۡرِقَ أَهۡلَهَا لَقَدۡ جِئۡتَ شَيۡـًٔا إِمۡرٗا ﴿٧١﴾

---

72. ಆ ವ್ಯಕ್ತಿ ಹೇಳಿದರು: "ನಾನು ಹೇಳಿರಲಿಲ್ಲವೇ? ನನ್ನ ಜೊತೆ ತಾಳ್ಮೆಯಿಂದಿರಲು ನಿಮಗೆ ಸಾಧ್ಯವಿಲ್ಲವೆಂದು!"

قَالَ أَلَمۡ أَقُلۡ إِنَّكَ لَن تَسۡتَطِيعَ مَعِيَ صَبۡرٗا ﴿٧٢﴾

---

73. ಮೂಸಾ ಹೇಳಿದರು: "ನಾನು ಅದನ್ನು ಮರೆತುಬಿಟ್ಟದ್ದಕ್ಕಾಗಿ ನನ್ನನ್ನು ಶಿಕ್ಷಿಸಬೇಡಿ. ನನಗೆ ಕಷ್ಟವಾಗಿರುವ ವಿಷಯವನ್ನು ನನ್ನ ಮೇಲೆ ಹೇರಬೇಡಿ."

قَالَ لَا تُؤَاخِذۡنِي بِمَا نَسِيتُ وَلَا تُرۡهِقۡنِي مِنۡ أَمۡرِي عُسۡرٗا ﴿٧٣﴾

---

74. ಅವರಿಬ್ಬರೂ ಹೊರಟರು. ಎಲ್ಲಿಯವರೆಗೆಂದರೆ, ಅವರೊಬ್ಬ ಹುಡುಗನನ್ನು ಭೇಟಿಯಾದಾಗ, ಆ ವ್ಯಕ್ತಿ ಆ ಹುಡುಗನನ್ನು ಕೊಂದರು. ಮೂಸಾ ಹೇಳಿದರು: "ಯಾರನ್ನೂ ಕೊಲೆ ಮಾಡದ ಒಂದು ಪರಿಶುದ್ಧ ಜೀವವನ್ನು ನೀವು ಕೊಂದುಬಿಟ್ಟಿರಿ. ನಿಜಕ್ಕೂ ನೀವು ಬಹಳ ಶೋಚನೀಯ ಕೆಲಸವನ್ನು ಮಾಡಿದ್ದೀರಿ."

فَٱنطَلَقَا حَتَّىٰٓ إِذَا لَقِيَا غُلَٰمٗا فَقَتَلَهُۥ قَالَ أَقَتَلۡتَ نَفۡسٗا زَكِيَّةَۢ بِغَيۡرِ نَفۡسٖ لَّقَدۡ جِئۡتَ شَيۡـٔٗا نُّكۡرٗا ﴿٧٤﴾

---

75. ಆ ವ್ಯಕ್ತಿ ಹೇಳಿದರು: "ನಾನು ಹೇಳಿರಲಿಲ್ಲವೇ? ನನ್ನ ಜೊತೆ ತಾಳ್ಮೆಯಿಂದಿರಲು ನಿಮಗೆ ಸಾಧ್ಯವಿಲ್ಲವೆಂದು!"

قَالَ أَلَمۡ أَقُل لَّكَ إِنَّكَ لَن تَسۡتَطِيعَ مَعِيَ صَبۡرٗا ﴿٧٥﴾

---

76. ಮೂಸಾ ಹೇಳಿದರು: "ಇನ್ನು ಮುಂದಕ್ಕೆ ನಾನು ನಿಮ್ಮಲ್ಲಿ ಯಾವುದಾದರೂ ವಿಷಯದ ಬಗ್ಗೆ ಪ್ರಶ್ನಿಸಿದರೆ, ನೀವು ನನ್ನನ್ನು ಬಿಟ್ಟು ಹೋಗಬಹುದು. ನನ್ನ ಕಡೆಯಿಂದ ನಿಮಗಂತೂ ಒಂದು ನೆವನ ಸಿಕ್ಕಿಬಿಟ್ಟಿದೆ."

قَالَ إِن سَأَلۡتُكَ عَن شَيۡءِۭ بَعۡدَهَا فَلَا تُصَٰحِبۡنِيۖ قَدۡ بَلَغۡتَ مِن لَّدُنِّي عُذۡرٗا ﴿٧٦﴾

---

77. ಅವರಿಬ್ಬರೂ ಹೊರಟರು. ಎಲ್ಲಿಯವರೆಗೆಂದರೆ, ಅವರು ಒಂದು ಊರನ್ನು ತಲುಪಿದಾಗ, ಅದರ ನಿವಾಸಿಗಳೊಡನೆ ಆಹಾರ ಕೇಳಿದರು. ಆದರೆ ಅವರು ಆತಿಥ್ಯ ನೀಡಲು ನಿರಾಕರಿಸಿದರು. ಆಗ ಅವರು ಅಲ್ಲಿ ಕುಸಿದು ಬೀಳುವಂತಾಗಿರುವ ಒಂದು ಗೋಡೆಯನ್ನು ಕಂಡರು. ತಕ್ಷಣ ಆ ವ್ಯಕ್ತಿ ಅದನ್ನು ದುರಸ್ತಿಗೊಳಿಸಿ

فَٱنطَلَقَا حَتَّىٰٓ إِذَآ أَتَيَآ أَهۡلَ قَرۡيَةٍ ٱسۡتَطۡعَمَآ أَهۡلَهَا فَأَبَوۡاْ أَن يُضَيِّفُوهُمَا فَوَجَدَا فِيهَا جِدَارٗا يُرِيدُ أَن يَنقَضَّ فَأَقَامَهُۥۖ قَالَ لَوۡ شِئۡتَ لَتَّخَذۡتَ عَلَيۡهِ أَجۡرٗا ﴿٧٧﴾

ನಿಲ್ಲಿಸಿದರು. ಮೂಸಾ ಹೇಳಿದರು: "ನೀವು ಬಯಸಿದರೆ ಈ ಕೆಲಸ ಮಾಡಿದ್ದಕ್ಕಾಗಿ ಅವರಿಂದ ವೇತನ ಪಡೆಯಬಹುದಿತ್ತು."

---

78. ಆ ವ್ಯಕ್ತಿ ಹೇಳಿದರು: "ಇದು ನಮ್ಮ ನಡುವಿನ ಅಗಲಿಕೆಯಾಗಿದೆ. ಯಾವುದರ ಬಗ್ಗೆ ತಾಳ್ಮೆಯಿಂದಿರಲು ನಿಮಗೆ ಸಾಧ್ಯವಾಗಲಿ-ಲ್ಲವೋ ಅದರ ಮರ್ಮವನ್ನು ನಾನು ನಿಮಗೆ ತಿಳಿಸಿಕೊಡುತ್ತೇನೆ.

قَالَ هَٰذَا فِرَاقُ بَيۡنِي وَبَيۡنِكَۚ سَأُنَبِّئُكَ بِتَأۡوِيلِ مَا لَمۡ تَسۡتَطِع عَّلَيۡهِ صَبۡرًا ﴿٧٨﴾

---

79. ಆ ನಾವೆಯು ಕಡಲಲ್ಲಿ ಕೆಲಸ ಮಾಡುವ ಕೆಲವು ಬಡವರದ್ದಾ-ಗಿತ್ತು. ಆದ್ದರಿಂದ ನಾನು ಅದನ್ನು ಹಾಳುಮಾಡಲು ಬಯಸಿದೆನು. ಏಕೆಂದರೆ, ಅವರ ಹಿಂಭಾಗದಲ್ಲಿ ಒಬ್ಬ ಅರಸನಿದ್ದನು ಮತ್ತು ಅವನು ಎಲ್ಲಾ (ಉತ್ತಮ) ನಾವೆಗಳನ್ನು ಬಲವಂತದಿಂದ ವಶಪಡಿಸಿಕೊಳ್ಳುತ್ತಿದ್ದನು.

أَمَّا ٱلسَّفِينَةُ فَكَانَتۡ لِمَسَٰكِينَ يَعۡمَلُونَ فِي ٱلۡبَحۡرِ فَأَرَدتُّ أَنۡ أَعِيبَهَا وَكَانَ وَرَآءَهُم مَّلِكٞ يَأۡخُذُ كُلَّ سَفِينَةٍ غَصۡبٗا ﴿٧٩﴾

---

80. ಆ ಹುಡುಗನ ಮಾತಾಪಿತರು ಸತ್ಯವಿಶ್ವಾಸಿಗಳಾಗಿದ್ದರು. ಅವನು (ದೊಡ್ಡವನಾಗಿ) ಅವರನ್ನು ಅತಿರೇಕ ಮತ್ತು ಸತ್ಯ ನಿಷೇಧಕ್ಕೆ ನಿರ್ಬಂಧಿಸಬಹುದೆಂದು ನಮಗೆ ಭಯವಾಯಿತು.

وَأَمَّا ٱلۡغُلَٰمُ فَكَانَ أَبَوَاهُ مُؤۡمِنَيۡنِ فَخَشِينَآ أَن يُرۡهِقَهُمَا طُغۡيَٰنٗا وَكُفۡرٗا ﴿٨٠﴾

---

81. ಆದ್ದರಿಂದ ಅವರ ಪರಿಪಾಲಕನು (ಅಲ್ಲಾಹು) ಅವರಿಗೆ ಅವನಿಗಿಂತಲೂ ಹೆಚ್ಚು ಪರಿಶುದ್ಧನಾದ ಮತ್ತು ಅವನಿಗಿಂತಲೂ ಹೆಚ್ಚು ಪ್ರೀತಿ-ವಾತ್ಸಲ್ಯವಿರುವ ಒಬ್ಬ ಮಗನನ್ನು ಬದಲಿಯಾಗಿ ನೀಡಲಿ ಎಂದು ನಾವು ಬಯಸಿದೆವು.

فَأَرَدۡنَآ أَن يُبۡدِلَهُمَا رَبُّهُمَا خَيۡرٗا مِّنۡهُ زَكَوٰةٗ وَأَقۡرَبَ رُحۡمٗا ﴿٨١﴾

---

82. ಆ ಗೋಡೆಯು ಊರಿನ ಇಬ್ಬರು ಅನಾಥ ಬಾಲಕರಿಗೆ ಸೇರಿತ್ತು. ಅದರ ಅಡಿಯಲ್ಲಿ ಅವರಿಗೆ ಸಿಗಬೇಕಾದ ಒಂದು ನಿಧಿಯಿತ್ತು. ಅವರ ತಂದೆ ನೀತಿವಂತನಾಗಿದ್ದ. ಆದ್ದರಿಂದ ಅವರಿಬ್ಬರೂ ಪ್ರೌಢಾವಸ್ಥೆಯನ್ನು ತಲುಪಿದ ನಂತರ ತಮ್ಮ ನಿಧಿಯನ್ನು ಹೊರತೆಗೆಯಬೇಕೆಂದು ನಿಮ್ಮ ಪರಿಪಾಲಕ (ಅಲ್ಲಾಹು) ಬಯಸಿದ್ದನು. ಇದು ನಮ್ಮ ಪರಿಪಾಲಕನ (ಅಲ್ಲಾಹನ) ದಯೆಯಾಗಿದೆ. ನಾನು ಇವೆಲ್ಲವನ್ನೂ ನನ್ನ ಇಷ್ಟದಂತೆ ಮಾಡಿರಲಿಲ್ಲ. ಯಾವುದರ ಬಗ್ಗೆ ನಿಮಗೆ ತಾಳ್ಮೆಯಿಂದಿರಲು ಸಾಧ್ಯವಾಗಲಿಲ್ಲವೋ ಅದರ ಮರ್ಮವು ಇದೇ."

وَأَمَّا ٱلۡجِدَارُ فَكَانَ لِغُلَٰمَيۡنِ يَتِيمَيۡنِ فِي ٱلۡمَدِينَةِ وَكَانَ تَحۡتَهُۥ كَنزٞ لَّهُمَا وَكَانَ أَبُوهُمَا صَٰلِحٗا فَأَرَادَ رَبُّكَ أَن يَبۡلُغَآ أَشُدَّهُمَا وَيَسۡتَخۡرِجَا كَنزَهُمَا رَحۡمَةٗ مِّن رَّبِّكَۚ وَمَا فَعَلۡتُهُۥ عَنۡ أَمۡرِيۚ ذَٰلِكَ تَأۡوِيلُ مَا لَمۡ تَسۡطِع عَّلَيۡهِ صَبۡرٗا ﴿٨٢﴾

---

83. (ಪ್ರವಾದಿಯವರೇ) ಅವರು ನಿಮ್ಮಲ್ಲಿ ದುಲ್-ಕರ್ನೈನರ ಬಗ್ಗೆ ಕೇಳುತ್ತಾರೆ. ಹೇಳಿರಿ: "ಅವರ ಬಗ್ಗೆ ನಾನು ನಿಮಗೆ ಸ್ವಲ್ಪ ಓದಿ ಕೊಡುತ್ತೇನೆ."

وَيَسۡـَٔلُونَكَ عَن ذِي ٱلۡقَرۡنَيۡنِۖ قُلۡ سَأَتۡلُواْ عَلَيۡكُم مِّنۡهُ ذِكۡرًا ﴿٨٣﴾

---

84. ನಾವು ಅವರಿಗೆ ಭೂಮಿಯಲ್ಲಿ ಅಧಿಕಾರವನ್ನು ನೀಡಿದ್ದೆವು ಮತ್ತು ಅವರಿಗೆ ಬೇಕಾದ ಎಲ್ಲಾ ಸಾಧನಾನುಕೂಲತೆಗಳನ್ನು ನೀಡಿದ್ದೆವು.

إِنَّا مَكَّنَّا لَهُۥ فِي ٱلۡأَرۡضِ وَءَاتَيۡنَٰهُ مِن كُلِّ شَيۡءٖ سَبَبٗا ﴿٨٤﴾

| | | |
|---|---|---|
| 85. | ಅವರು ಒಂದು ಮಾರ್ಗವನ್ನು ಹಿಂಬಾಲಿಸಿ ಹೋದರು. | فَأَتۡبَعَ سَبَبًا ٨٥ |
| 86. | ಎಲ್ಲಿಯವರೆಗೆಂದರೆ, ಅವರು ಸೂರ್ಯಾಸ್ತದ ಸ್ಥಳಕ್ಕೆ ತಲುಪಿದಾಗ, ಅದು (ಸೂರ್ಯ) ಕೆಸರು ನೀರಿನ ತೊರೆಯಲ್ಲಿ ಅಸ್ತಮಿಸುವುದನ್ನು ಕಂಡರು. ಆ ತೊರೆಯ ಬಳಿ ಜನರನ್ನೂ ಕಂಡರು. ನಾವು ಹೇಳಿದೆವು: "ಓ ದುಲ್-ಕರ್ನೈನ್! ಒಂದೋ ಇವರನ್ನು ಶಿಕ್ಷಿಸಿ ಅಥವಾ ಅವರ ಬಗ್ಗೆ ಉತ್ತಮ ಸಮೀಪನವನ್ನು ಸ್ವೀಕರಿಸಿ." | حَتَّىٰٓ إِذَا بَلَغَ مَغۡرِبَ ٱلشَّمۡسِ وَجَدَهَا تَغۡرُبُ فِي عَيۡنٍ حَمِئَةٖ وَوَجَدَ عِندَهَا قَوۡمٗاۗ قُلۡنَا يَٰذَا ٱلۡقَرۡنَيۡنِ إِمَّآ أَن تُعَذِّبَ وَإِمَّآ أَن تَتَّخِذَ فِيهِمۡ حُسۡنٗا ٨٦ |
| 87. | ಅವರು ಹೇಳಿದರು: "ಯಾರು ಅಕ್ರಮವೆಸಗುತ್ತಾನೋ ಅವನನ್ನು ನಾವು ಶಿಕ್ಷಿಸುತ್ತೇವೆ. ನಂತರ ಅವನನ್ನು ಅವನ ಪರಿಪಾಲಕನ (ಅಲ್ಲಾಹನ) ಬಳಿಗೆ ಮರಳಿಸಲಾಗುತ್ತದೆ. ಆಗ ಅವನು ಅವನಿಗೆ ಕಠೋರ ಶಿಕ್ಷೆಯನ್ನು ನೀಡುತ್ತಾನೆ. | قَالَ أَمَّا مَن ظَلَمَ فَسَوۡفَ نُعَذِّبُهُۥ ثُمَّ يُرَدُّ إِلَىٰ رَبِّهِۦ فَيُعَذِّبُهُۥ عَذَابٗا نُّكۡرٗا ٨٧ |
| 88. | ಆದರೆ ಯಾರು ಸತ್ಯವಿಶ್ವಾಸಿಯಾಗಿದ್ದು ಸತ್ಕರ್ಮವೆಸಗುತ್ತಾನೋ ಅವನಿಗೆ ಅತ್ಯುತ್ತಮ ಪ್ರತಿಫಲವು ದೊರೆಯುತ್ತದೆ. ನಾವು ಅವನಿಗೆ ನಮ್ಮ ಕೆಲಸಗಳಲ್ಲಿ ಸುಲಭವಾಗಿರುವುದನ್ನೇ ಆದೇಶಿಸುತ್ತೇವೆ." | وَأَمَّا مَنۡ ءَامَنَ وَعَمِلَ صَٰلِحٗا فَلَهُۥ جَزَآءً ٱلۡحُسۡنَىٰۖ وَسَنَقُولُ لَهُۥ مِنۡ أَمۡرِنَا يُسۡرٗا ٨٨ |
| 89. | ನಂತರ ಅವರು ಇನ್ನೊಂದು ಮಾರ್ಗವನ್ನು ಹಿಂಬಾಲಿಸಿ ಹೋದರು. | ثُمَّ أَتۡبَعَ سَبَبًا ٨٩ |
| 90. | ಎಲ್ಲಿಯವರೆಗೆಂದರೆ, ಅವರು ಸೂರ್ಯೋದಯದ ಸ್ಥಳಕ್ಕೆ ತಲುಪಿದಾಗ, ಅದು (ಸೂರ್ಯ) ಜನರ ಮೇಲೆ ಉದಯವಾಗುತ್ತಿರುವಂತೆ ಕಂಡರು. ಅದರಿಂದ ಮರೆಯಾಗಲು ನಾವು ಅವರಿಗೆ ಯಾವುದೇ ಪರದೆಯನ್ನು ಮಾಡಿಕೊಟ್ಟಿರಲಿಲ್ಲ. | حَتَّىٰٓ إِذَا بَلَغَ مَطۡلِعَ ٱلشَّمۡسِ وَجَدَهَا تَطۡلُعُ عَلَىٰ قَوۡمٖ لَّمۡ نَجۡعَل لَّهُم مِّن دُونِهَا سِتۡرٗا ٩٠ |
| 91. | ವಿಷಯವು ಈ ರೀತಿಯಾಗಿದೆ. ನಾವು ಅವರ ಬಗೆಗಿನ ಎಲ್ಲಾ ಸಮಾಚಾರಗಳನ್ನು ಆವರಿಸಿಕೊಂಡಿದ್ದೆವು. | كَذَٰلِكَۖ وَقَدۡ أَحَطۡنَا بِمَا لَدَيۡهِ خُبۡرٗا ٩١ |
| 92. | ನಂತರ ಅವರು ಇನ್ನೊಂದು ಮಾರ್ಗವನ್ನು ಹಿಂಬಾಲಿಸಿ ಹೋದರು. | ثُمَّ أَتۡبَعَ سَبَبًا ٩٢ |
| 93. | ಎಲ್ಲಿಯವರೆಗೆಂದರೆ, ಅವರು ಎರಡು ಬೆಟ್ಟಗಳ ನಡುವೆ ತಲುಪಿದಾಗ, ಅವುಗಳ ಈಚೆ ಬದಿಯಲ್ಲಿ ಒಂದು ಜನತೆಯನ್ನು ಕಂಡರು. ಅವರಿಗೆ ಮಾತನ್ನು ಅರ್ಥಮಾಡಿಕೊಳ್ಳಲು ಸಾಧ್ಯವಾಗುತ್ತಿರಲಿಲ್ಲ. | حَتَّىٰٓ إِذَا بَلَغَ بَيۡنَ ٱلسَّدَّيۡنِ وَجَدَ مِن دُونِهِمَا قَوۡمٗا لَّا يَكَادُونَ يَفۡقَهُونَ قَوۡلٗا ٩٣ |
| 94. | ಅವರು ಹೇಳಿದರು: "ಓ ದುಲ್-ಕರ್ನೈನ್! ನಿಶ್ಚಯವಾಗಿಯೂ ಯಾಜೂಜ್-ಮಾಜೂಜರು ಭೂಮಿಯಲ್ಲಿ ಕಿಡಿಗೇಡಿತನ | قَالُواْ يَٰذَا ٱلۡقَرۡنَيۡنِ إِنَّ يَأۡجُوجَ وَمَأۡجُوجَ مُفۡسِدُونَ فِي ٱلۡأَرۡضِ فَهَلۡ نَجۡعَلُ لَكَ خَرۡجًا |

ಮಾಡುತ್ತಿದ್ದಾರೆ. ನಾವು ನಿಮಗೆ ಒಂದು ಖರ್ಚನ್ನು ನಿಗದಿಪಡಿಸಿದರೆ, ನೀವು ನಮ್ಮ ಮತ್ತು ಅವರ ನಡುವೆ ಒಂದು ತಡೆಗೋಡೆಯನ್ನು ನಿರ್ಮಿಸಿಕೊಡುವಿರಾ?

عَلَىٰٓ أَن تَجۡعَلَ بَيۡنَنَا وَبَيۡنَهُمۡ سَدّٗا ٩٤

---

95. ದುಲ್-ಕರ್ನೈನ್ ಹೇಳಿದರು: "ನನ್ನ ಪರಿಪಾಲಕನು (ಅಲ್ಲಾಹು) ಏನೆಲ್ಲಾ ನನ್ನ ಅಧಿಕಾರಕ್ಕೆ ನೀಡಿದ್ದಾನೋ ಅದು ಅತ್ಯುತ್ತ-ಮವಾಗಿದೆ. ನೀವು ನಿಮ್ಮ ದೇಹಬಲದಿಂದ ನನಗೆ ಸಹಾಯ ಮಾಡಿರಿ. ನಿಮ್ಮ ಮತ್ತು ಅವರ ನಡುವೆ ನಾನು ಒಂದು ಬಲಿಷ್ಠ ಗೋಡೆಯನ್ನು ನಿರ್ಮಿಸಿಕೊಡುತ್ತೇನೆ."

قَالَ مَا مَكَّنِّي فِيهِ رَبِّي خَيۡرٞ فَأَعِينُونِي بِقُوَّةٍ
أَجۡعَلۡ بَيۡنَكُمۡ وَبَيۡنَهُمۡ رَدۡمًا ٩٥

---

96. (ನಂತರ ಅವರು ಹೇಳಿದರು): "ನನಗೆ ಕಬ್ಬಿಣದ ತುಂಡುಗಳನ್ನು ತಂದುಕೊಡಿ." ಎಲ್ಲಿಯವರೆಗೆಂದರೆ, ಆ ಎರಡು ಬೆಟ್ಟಗಳ ನಡುವೆ ಗೋಡೆಯನ್ನು ಸಮಗೊಳಿಸಿದಾಗ, ಅವರು ಹೇಳಿದರು: "ಬೆಂಕಿಯನ್ನು ಜೋರಾಗಿ ಉರಿಯುವಂತೆ ಮಾಡಿರಿ." ಎಲ್ಲಿ-ಯವರೆಗೆಂದರೆ, ಆ ಕಬ್ಬಿಣದ ತುಂಡುಗಳು ಸಂಪೂರ್ಣ ಕೆಂಡದಂತಾದಾಗ, ಅವರು ಹೇಳಿದರು: "ನನಗೆ ಕರಗಿಸಿದ ತಾಮ್ರವನ್ನು ತಂದು ಕೊಡಿ. ನಾನು ಅದನ್ನು ಅದಕ್ಕೆ ಸುರಿಯುತ್ತೇನೆ."

ءَاتُونِي زُبَرَ ٱلۡحَدِيدِۖ حَتَّىٰٓ إِذَا سَاوَىٰ بَيۡنَ
ٱلصَّدَفَيۡنِ قَالَ ٱنفُخُواْۖ حَتَّىٰٓ إِذَا جَعَلَهُۥ نَارٗا
قَالَ ءَاتُونِيٓ أُفۡرِغۡ عَلَيۡهِ قِطۡرٗا ٩٦

---

97. ನಂತರ ಆ ಗೋಡೆಯನ್ನು ಏರಿ ಬರಲು ಅವರಿಗೆ (ಯಾಜೂಜ್-ಮಾಜೂಜರಿಗೆ) ಸಾಧ್ಯವಾಗಲಿಲ್ಲ. ಅದಕ್ಕೆ ಕನ್ನ ಕೊರೆಯಲೂ ಅವರಿಗೆ ಸಾಧ್ಯವಾಗಲಿಲ್ಲ.

فَمَا ٱسۡطَٰعُوٓاْ أَن يَظۡهَرُوهُ وَمَا ٱسۡتَطَٰعُواْ لَهُۥ
نَقۡبٗا ٩٧

---

98. ದುಲ್-ಕರ್ನೈನ್ ಹೇಳಿದರು: "ಇದು ನನ್ನ ಪರಿಪಾಲಕನ (ಅಲ್ಲಾಹನ) ಕಡೆಯ ದಯೆಯಾಗಿದೆ. ನನ್ನ ಪರಿಪಾಲಕನ (ಅಲ್ಲಾಹನ) ವಾಗ್ದಾನವು ಬಂದರೆ ಅವನು ಅದನ್ನು ನುಚ್ಚುನೂರು ಮಾಡುವನು. ನನ್ನ ಪರಿಪಾಲಕನ (ಅಲ್ಲಾಹನ) ವಾಗ್ದಾನವು ಸತ್ಯವಾಗಿದೆ."

قَالَ هَٰذَا رَحۡمَةٞ مِّن رَّبِّيۖ فَإِذَا جَآءَ وَعۡدُ رَبِّي
جَعَلَهُۥ دَكَّآءَۖ وَكَانَ وَعۡدُ رَبِّي حَقّٗا ٩٨

---

99. (ಅಂದು) ಅವರು ಪರಸ್ಪರ ಉಕ್ಕೇರುವಂತೆ ಅವರನ್ನು ಬಿಟ್ಟುಬಿಡುವೆವು. ಕಹಳೆಯಲ್ಲಿ ಊದಲಾಗುವುದು. ಆಗ ನಾವು ಅವರೆಲ್ಲರನ್ನೂ ಒಟ್ಟಾಗಿ ಸೇರಿಸುವೆವು.

وَتَرَكۡنَا بَعۡضَهُمۡ يَوۡمَئِذٖ يَمُوجُ فِي بَعۡضٖۖ وَنُفِخَ
فِي ٱلصُّورِ فَجَمَعۡنَٰهُمۡ جَمۡعٗا ٩٩

---

100. ಅಂದು ನಾವು ಸತ್ಯನಿಷೇಧಿಗಳಿಗೆ ನರಕವನ್ನು ನೇರವಾಗಿ ತೋರಿಸುವೆವು.

وَعَرَضۡنَا جَهَنَّمَ يَوۡمَئِذٖ لِّلۡكَٰفِرِينَ عَرۡضًا ١٠٠

---

101. ಅವರು ಯಾರೆಂದರೆ, ಅವರ ಕಣ್ಣುಗಳಿಗೆ ನನ್ನ ನೆನಪು ಬರದಂತೆ ಪರದೆ ಹಾಕಲಾದವರು. ಸತ್ಯಕ್ಕೆ ಕಿವಿಗೊಡಲು ಕೂಡ ಅವರಿಗೆ

ٱلَّذِينَ كَانَتۡ أَعۡيُنُهُمۡ فِي غِطَآءٍ عَن ذِكۡرِي
وَكَانُواْ لَا يَسۡتَطِيعُونَ سَمۡعًا ١٠١

ಸಾಧ್ಯವಾಗುತ್ತಿರಲಿಲ್ಲ.

| | |
|---|---|
| 102. ನನ್ನನ್ನು ಬಿಟ್ಟು ನನ್ನ ದಾಸರನ್ನು ರಕ್ಷಕರನ್ನಾಗಿ ಸ್ವೀಕರಿಸಬಹುದೆಂದು ಸತ್ಯನಿಷೇಧಿಗಳು ಭಾವಿಸಿದ್ದಾರೆಯೇ? ನಿಶ್ಚಯವಾಗಿಯೂ ನಾವು ಸತ್ಯನಿಷೇಧಿಗಳಿಗೆ ಆತಿಥ್ಯವಾಗಿ ನರಕಾಗ್ನಿಯನ್ನು ಸಿದ್ಧಗೊಳಿಸಿದ್ದೇವೆ. | أَفَحَسِبَ ٱلَّذِينَ كَفَرُوٓاْ أَن يَتَّخِذُواْ عِبَادِي مِن دُونِيٓ أَوۡلِيَآءَۚ إِنَّآ أَعۡتَدۡنَا جَهَنَّمَ لِلۡكَٰفِرِينَ نُزُلٗا ١٠٢ |
| 103. (ಪ್ರವಾದಿಯವರೇ) ಕೇಳಿರಿ: "ಕರ್ಮಗಳ ವಿಷಯದಲ್ಲಿ ಅತಿ ಹೆಚ್ಚು ನಷ್ಟದಲ್ಲಿರುವವರು ಯಾರೆಂದು ನಾವು ನಿಮಗೆ ತಿಳಿಸಿಕೊಡಲೇ? | قُلۡ هَلۡ نُنَبِّئُكُم بِٱلۡأَخۡسَرِينَ أَعۡمَٰلًا ١٠٣ |
| 104. ಅವರು ಯಾರೆಂದರೆ, ಇಹಲೋಕ ಜೀವನದಲ್ಲಿ ತಮ್ಮ ಪರಿಶ್ರಮಗಳನ್ನು ವ್ಯರ್ಥಗೊಳಿಸಿದವರು. ಅವರು ತಾವು ಅತ್ಯುತ್ತಮ ಕರ್ಮಗಳನ್ನು ಮಾಡುತ್ತಿದ್ದೇವೆಂಬ ಭಾವನೆಯಲ್ಲಿದ್ದಾರೆ." | ٱلَّذِينَ ضَلَّ سَعۡيُهُمۡ فِي ٱلۡحَيَوٰةِ ٱلدُّنۡيَا وَهُمۡ يَحۡسَبُونَ أَنَّهُمۡ يُحۡسِنُونَ صُنۡعًا ١٠٤ |
| 105. ಅವರೇ ತಮ್ಮ ಪರಿಪಾಲಕನ (ಅಲ್ಲಾಹನ) ವಚನಗಳನ್ನು ಮತ್ತು ಅವನನ್ನು ಭೇಟಿಯಾಗುವುದನ್ನು ನಿಷೇಧಿಸಿದವರು. ಆದ್ದರಿಂದ ಅವರ ಕರ್ಮಗಳು ವ್ಯರ್ಥವಾದವು. ಪುನರುತ್ಥಾನ ದಿನದಂದು ನಾವು ಅವರಿಗೆ ಯಾವುದೇ ತೂಕವನ್ನು (ಪ್ರಾಮುಖ್ಯತೆಯನ್ನು) ನೀಡುವುದಿಲ್ಲ. | أُوْلَٰٓئِكَ ٱلَّذِينَ كَفَرُواْ بِـَٔايَٰتِ رَبِّهِمۡ وَلِقَآئِهِۦ فَحَبِطَتۡ أَعۡمَٰلُهُمۡ فَلَا نُقِيمُ لَهُمۡ يَوۡمَ ٱلۡقِيَٰمَةِ وَزۡنٗا ١٠٥ |
| 106. ಅದೇ ಅವರ ಸ್ಥಿತಿ! ಅವರು ನಿಷೇಧಿಸಿದ ಕಾರಣ ಮತ್ತು ನನ್ನ ವಚನಗಳನ್ನು ಹಾಗೂ ನನ್ನ ಸಂದೇಶವಾಹಕರುಗಳನ್ನು ತಮಾಷೆಯಾಗಿ ಸ್ವೀಕರಿಸಿದ ಕಾರಣ ಅವರಿಗಿರುವ ಪ್ರತಿಫಲವು ನರಕವಾಗಿದೆ. | ذَٰلِكَ جَزَآؤُهُمۡ جَهَنَّمُ بِمَا كَفَرُواْ وَٱتَّخَذُوٓاْ ءَايَٰتِي وَرُسُلِي هُزُوًا ١٠٦ |
| 107. ನಿಶ್ಚಯವಾಗಿಯೂ ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ ಅವರಿಗೆ ಆತಿಥ್ಯವಾಗಿ ಫಿರ್ದೌಸ್ (ಅತ್ಯುನ್ನತ) ಸ್ವರ್ಗೋದ್ಯಾನಗಳಿವೆ. | إِنَّ ٱلَّذِينَ ءَامَنُواْ وَعَمِلُواْ ٱلصَّٰلِحَٰتِ كَانَتۡ لَهُمۡ جَنَّٰتُ ٱلۡفِرۡدَوۡسِ نُزُلًا ١٠٧ |
| 108. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅದರಿಂದ ಸ್ಥಳಾಂತರಗೊಳ್ಳಲು ಅವರು ಯಾವತ್ತೂ ಬಯಸುವುದಿಲ್ಲ. | خَٰلِدِينَ فِيهَا لَا يَبۡغُونَ عَنۡهَا حِوَلٗا ١٠٨ |
| 109. ಹೇಳಿರಿ: "ನನ್ನ ಪರಿಪಾಲಕನ (ಅಲ್ಲಾಹನ) ವಚನಗಳನ್ನು ಬರೆಯಲು ಸಮುದ್ರ ಜಲವನ್ನು ಶಾಯಿಯಾಗಿ ಬಳಸಿದರೆ, ನನ್ನ ಪರಿಪಾಲಕನ (ಅಲ್ಲಾಹನ) ವಚನಗಳು ಮುಗಿಯುವ ಮೊದಲೇ ಸಮುದ್ರದ ನೀರು ಮುಗಿಯುವುದು ನಿಶ್ಚಿತ. ನಾವು ಅದರಂತಿರುವ ಇನ್ನೊಂದನ್ನು ಸಹಾಯಕ್ಕಾಗಿ ತಂದರೂ ಸಹ." | قُل لَّوۡ كَانَ ٱلۡبَحۡرُ مِدَادٗا لِّكَلِمَٰتِ رَبِّي لَنَفِدَ ٱلۡبَحۡرُ قَبۡلَ أَن تَنفَدَ كَلِمَٰتُ رَبِّي وَلَوۡ جِئۡنَا بِمِثۡلِهِۦ مَدَدٗا ١٠٩ |
| 110. (ಪ್ರವಾದಿಯವರೇ) ಹೇಳಿರಿ: "ನಾನು ನಿಮ್ಮಂತಹ ಒಬ್ಬ ಮನುಷ್ಯ | قُلۡ إِنَّمَآ أَنَا۠ بَشَرٞ مِّثۡلُكُمۡ يُوحَىٰٓ إِلَيَّ أَنَّمَآ |

إِلَٰهُكُمْ إِلَٰهٌ وَاحِدٌ ۖ فَمَن كَانَ يَرْجُوا لِقَاءَ رَبِّهِۦ فَلْيَعْمَلْ عَمَلًا صَالِحًا وَلَا يُشْرِكْ بِعِبَادَةِ رَبِّهِۦٓ أَحَدًا ﴿١١٠﴾

ಮಾತ್ರವಾಗಿದ್ದೇನೆ. ನಿಮ್ಮ ದೇವನು ಏಕೈಕ ದೇವನೆಂದು ನನಗೆ ದೇವವಾಣಿ ನೀಡಲಾಗುತ್ತಿದೆ. ಆದ್ದರಿಂದ ಯಾರು ತನ್ನ ಪರಿಪಾಲಕನ (ಅಲ್ಲಾಹನ) ಭೇಟಿಯನ್ನು ನಿರೀಕ್ಷಿಸುತ್ತಾನೋ ಅವನು ಸತ್ಕರ್ಮಗಳನ್ನು ಮಾಡಲಿ ಮತ್ತು ತನ್ನ ಪರಿಪಾಲಕನ (ಅಲ್ಲಾಹನ) ಆರಾಧನೆಯಲ್ಲಿ ಯಾರನ್ನೂ ಸಹಭಾಗಿಯಾಗಿ ಮಾಡದಿರಲಿ.”

## 19. ಮರ್ಯಮ್

بِسْمِ اللَّهِ الرَّحْمَٰنِ الرَّحِيمِ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

كٓهيعٓصٓ ﴿١﴾

1. ಕಾಫ್ ಹಾ ಯಾ ಐನ್ ಸ್ವಾದ್.

ذِكْرُ رَحْمَتِ رَبِّكَ عَبْدَهُۥ زَكَرِيَّآ ﴿٢﴾

2. ಇದು ನಿಮ್ಮ ಪರಿಪಾಲಕನು (ಅಲ್ಲಾಹು) ತನ್ನ ದಾಸ ಝಕರಿಯ್ಯಾರಿಗೆ ದಯಪಾಲಿಸಿದ ದಯೆಯ ಉಲ್ಲೇಖವಾಗಿದೆ.

إِذْ نَادَىٰ رَبَّهُۥ نِدَآءً خَفِيًّا ﴿٣﴾

3. ಅವರು (ಝಕರಿಯ್ಯಾ) ತನ್ನ ಪರಿಪಾಲಕನನ್ನು (ಅಲ್ಲಾಹನನ್ನು) ರಹಸ್ಯವಾಗಿ ಕರೆದು ಪ್ರಾರ್ಥಿಸಿದ ಸಂದರ್ಭ.

قَالَ رَبِّ إِنِّى وَهَنَ ٱلْعَظْمُ مِنِّى وَٱشْتَعَلَ ٱلرَّأْسُ شَيْبًا وَلَمْ أَكُنۢ بِدُعَآئِكَ رَبِّ شَقِيًّا ﴿٤﴾

4. ಅವರು ಹೇಳಿದರು: “ನನ್ನ ಪರಿಪಾಲಕನೇ! ನನ್ನ ಮೂಳೆಗಳು ದುರ್ಬಲವಾಗಿವೆ. ವಯಸ್ಸಾಗಿ ತಲೆಯು ಬೆಳ್ಳಗಾಗಿದೆ. ನನ್ನ ಪರಿಪಾಲಕನೇ! ನಿನ್ನಲ್ಲಿ ಪ್ರಾರ್ಥಿಸಿ ನಾನು ಯಾವತ್ತೂ ನಿರಾಶನಾಗಿಲ್ಲ.

وَإِنِّى خِفْتُ ٱلْمَوَٰلِىَ مِن وَرَآءِى وَكَانَتِ ٱمْرَأَتِى عَاقِرًا فَهَبْ لِى مِن لَّدُنكَ وَلِيًّا ﴿٥﴾

5. ನಿಶ್ಚಯವಾಗಿಯೂ, ನನ್ನ ಮರಣಾನಂತರ ನನ್ನ ಕುಟುಂಬದವರ ಬಗ್ಗೆ ನಾನು ಭಯವಾಗುತ್ತಿದೆ. ನನ್ನ ಪತ್ನಿ ಬಂಜೆಯಾಗಿದ್ದಾಳೆ. ಆದ್ದರಿಂದ ನನಗೆ ನಿನ್ನ ಕಡೆಯಿಂದ ಒಬ್ಬ ಉತ್ತರಾಧಿಕಾರಿಯನ್ನು ಕರುಣಿಸು.

يَرِثُنِى وَيَرِثُ مِنْ ءَالِ يَعْقُوبَ ۖ وَٱجْعَلْهُ رَبِّ رَضِيًّا ﴿٦﴾

6. ಅವನು ನನ್ನ ವಾರಸುದಾರ ಮತ್ತು ಯಾಕೂಬ್ ಕುಟುಂಬದ ವಾರಸುದಾರನಾಗಿರಲಿ. ಓ ನನ್ನ ಪರಿಪಾಲಕನೇ! ಅವನನ್ನು ಸಂತೃಪ್ತ ದಾಸನನ್ನಾಗಿ ಮಾಡು.”

يَٰزَكَرِيَّآ إِنَّا نُبَشِّرُكَ بِغُلَٰمٍ ٱسْمُهُۥ يَحْيَىٰ لَمْ نَجْعَل لَّهُۥ مِن قَبْلُ سَمِيًّا ﴿٧﴾

7. “ಓ ಝಕರಿಯ್ಯಾ! ನಿಶ್ಚಯವಾಗಿಯೂ ನಾವು ನಿಮಗೆ ಒಬ್ಬ ಪುತ್ರನ ಜನನದ ಬಗ್ಗೆ ಶುಭವಾರ್ತೆ ನೀಡುತ್ತಿದ್ದೇವೆ. ಅವನ ಹೆಸರು ಯಹ್ಯಾ. ಇದಕ್ಕಿಂತ ಮೊದಲು ನಾವು ಯಾರಿಗೂ ಆ ಹೆಸರನ್ನು ನೀಡಿಲ್ಲ.”

قَالَ رَبِّ أَنَّىٰ يَكُونُ لِى غُلَٰمٌ وَكَانَتِ ٱمْرَأَتِى

8. ಝಕರಿಯ್ಯಾ ಹೇಳಿದರು: “ಓ ನನ್ನ ಪರಿಪಾಲಕನೇ! ನನಗೊಬ್ಬ

ಪುತ್ರ ಉಂಟಾಗುವುದು ಹೇಗೆ? ನನ್ನ ಪತ್ನಿ ಬಂಜೆಯಾಗಿದ್ದಾಳೆ. ನಾನಂತೂ ವಯೋವೃದ್ಧನಾಗಿ ಬಿಟ್ಟಿದ್ದೇನೆ."

عَاقِرٗا وَقَدۡ بَلَغۡتُ مِنَ ٱلۡكِبَرِ عِتِيّٗا ٨

9. ಅಲ್ಲಾಹು ಹೇಳಿದನು: "ಅದು ಹಾಗೆಯೇ ಆಗಿದೆ. ನಿಮ್ಮ ಪರಿಪಾಲಕನು (ಅಲ್ಲಾಹು) ಹೇಳುತ್ತಾನೆ: ಅದು ನನಗೆ ಅತ್ಯಂತ ಸುಲಭವಾಗಿದೆ. ಇದಕ್ಕೆ ಮೊದಲು, ನೀವು ಅಸ್ತಿತ್ವದಲ್ಲೇ ಇರದಿದ್ದಾಗ ನಾನು ನಿಮ್ಮನ್ನು ಸೃಷ್ಟಿಸಿದ್ದೇನೆ."

قَالَ كَذَٰلِكَ قَالَ رَبُّكَ هُوَ عَلَيَّ هَيِّنٞ وَقَدۡ
خَلَقۡتُكَ مِن قَبۡلُ وَلَمۡ تَكُ شَيۡـٔٗا ٩

10. ಝಕರಿಯ್ಯಾ ಹೇಳಿದರು: "ಓ ನನ್ನ ಪರಿಪಾಲಕನೇ! ನನಗೊಂದು ದೃಷ್ಟಾಂತವನ್ನು ನಿಶ್ಚಯಿಸಿಕೊಡು." ಅಲ್ಲಾಹು ಹೇಳಿದನು: "ನೀವು ಸರಿಯಾಗಿದ್ದರೂ ಸಹ ಮೂರು ರಾತ್ರಿಗಳವರೆಗೆ ಜನರೊಡನೆ ಮಾತನಾಡಲು ನಿಮಗೆ ಸಾಧ್ಯವಾಗದಿರುವುದು ನಿಮಗಿರುವ ದೃಷ್ಟಾಂತವಾಗಿದೆ."

قَالَ رَبِّ ٱجۡعَل لِّيٓ ءَايَةٗۖ قَالَ ءَايَتُكَ أَلَّا تُكَلِّمَ
ٱلنَّاسَ ثَلَٰثَ لَيَالٖ سَوِيّٗا ١٠

11. ನಂತರ ಅವರು ಪ್ರಾರ್ಥನಾ ಕೊಠಡಿಯಿಂದ ಜನರ ಬಳಿಗೆ ತೆರಳಿ, "ನೀವು ಮುಂಜಾನೆ ಮತ್ತು ಸಂಜೆ ಅಲ್ಲಾಹನ ಪರಿಶುದ್ಧತೆಯನ್ನು ಕೊಂಡಾಡಿರಿ" ಎಂದು ಸನ್ನೆ ಮಾಡಿ ಹೇಳಿದರು.

فَخَرَجَ عَلَىٰ قَوۡمِهِۦ مِنَ ٱلۡمِحۡرَابِ فَأَوۡحَىٰٓ إِلَيۡهِمۡ
أَن سَبِّحُواْ بُكۡرَةٗ وَعَشِيّٗا ١١

12. "ಓ ಯಹ್ಯಾ! ಗ್ರಂಥವನ್ನು ಬಿಗಿಯಾಗಿ ಹಿಡಿದುಕೊಳ್ಳಿ," ನಾವು ಅವರಿಗೆ ಬಾಲ್ಯದಲ್ಲೇ ವಿವೇಕವನ್ನು ನೀಡಿದೆವು.

يَٰيَحۡيَىٰ خُذِ ٱلۡكِتَٰبَ بِقُوَّةٖۖ وَءَاتَيۡنَٰهُ ٱلۡحُكۡمَ
صَبِيّٗا ١٢

13. ಅವರಿಗೆ ನಮ್ಮ ಕಡೆಯ ವಾತ್ಸಲ್ಯ ಮತ್ತು ಪರಿಶುದ್ಧತೆಯನ್ನೂ ನೀಡಿದೆವು. ಅವರು ದೇವಭಯವುಳ್ಳವರಾಗಿದ್ದರು.

وَحَنَانٗا مِّن لَّدُنَّا وَزَكَوٰةٗۖ وَكَانَ تَقِيّٗا ١٣

14. ಅವರು ತಂದೆ-ತಾಯಿಗೆ ಒಳಿತು ಮಾಡುತ್ತಿದ್ದರು. ಅವರು ನಿರಂಕುಶರೋ ವಿಧೇಯತೆಯಿಲ್ಲದವರೋ ಆಗಿರಲಿಲ್ಲ.

وَبَرَّۢا بِوَٰلِدَيۡهِ وَلَمۡ يَكُن جَبَّارًا عَصِيّٗا ١٤

15. ಅವರು ಜನಿಸಿದ ದಿನ, ನಿಧನವಾಗುವ ದಿನ ಮತ್ತು ಅವರಿಗೆ ಪುನಃ ಜೀವ ನೀಡಿ ಎಬ್ಬಿಸಲಾಗುವ ದಿನ ಅವರ ಮೇಲೆ ಶಾಂತಿಯಿರುವುದು.

وَسَلَٰمٌ عَلَيۡهِ يَوۡمَ وُلِدَ وَيَوۡمَ يَمُوتُ وَيَوۡمَ يُبۡعَثُ
حَيّٗا ١٥

16. ಈ ಗ್ರಂಥದಲ್ಲಿ ಮರ್ಯಮರ ಬಗ್ಗೆ ತಿಳಿಸಿರಿ. ಅವರು ತಮ್ಮ ಮನೆಯವರಿಂದ ದೂರವಾಗಿ ಪೂರ್ವದಲ್ಲಿರುವ ಒಂದು ಸ್ಥಳಕ್ಕೆ ತೆರಳಿದ ಸಂದರ್ಭ.

وَٱذۡكُرۡ فِي ٱلۡكِتَٰبِ مَرۡيَمَ إِذِ ٱنتَبَذَتۡ مِنۡ
أَهۡلِهَا مَكَانٗا شَرۡقِيّٗا ١٦

17. ಜನರು ನೋಡದಿರಲು ಅವರು ಒಂದು ಪರದೆಯನ್ನು ಹಾಕಿಕೊಂಡರು. ನಂತರ ನಾವು ಅವರ ಬಳಿಗೆ ನಮ್ಮ ಆತ್ಮವನ್ನು (ಜಿಬ್ರೀಲರನ್ನು) ಕಳುಹಿಸಿದೆವು. ಜಿಬ್ರೀಲ್ ಅವರ ಮುಂದೆ ಪೂರ್ಣ ಮನುಷ್ಯ ರೂಪದಲ್ಲಿ ಪ್ರತ್ಯಕ್ಷರಾದರು.

فَٱتَّخَذَتۡ مِن دُونِهِمۡ حِجَابٗا فَأَرۡسَلۡنَآ إِلَيۡهَا
رُوحَنَا فَتَمَثَّلَ لَهَا بَشَرٗا سَوِيّٗا ١٧

18. ಮರ್ಯಮ್ ಹೇಳಿದರು: "ನಾನು ನಿನ್ನ ಕೆಡುಕಿನಿಂದ ಪರಮ ದಯಾಮಯನಲ್ಲಿ (ಅಲ್ಲಾಹನಲ್ಲಿ) ಅಭಯಕೋರುತ್ತೇನೆ. ನೀನು ದೇವಭಯವುಳ್ಳವನಾದರೆ (ನನ್ನಿಂದ ದೂರವಾಗು)."[1]

قَالَتۡ إِنِّيٓ أَعُوذُ بِٱلرَّحۡمَٰنِ مِنكَ إِن كُنتَ تَقِيّٗا ١٨

19. ಜಿಬ್ರೀಲ್ ಹೇಳಿದರು: "ನಾನು ನಿಮ್ಮ ಪರಿಪಾಲಕನ (ಅಲ್ಲಾಹನ) ದೂತನಾಗಿದ್ದೇನೆ. ನಿಮಗೆ ಒಬ್ಬ ಪರಿಶುದ್ಧ ಪುತ್ರನನ್ನು ನೀಡಲು ನಾನು ಬಂದಿದ್ದೇನೆ."

قَالَ إِنَّمَآ أَنَا۠ رَسُولُ رَبِّكِ لِأَهَبَ لَكِ غُلَٰمٗا زَكِيّٗا ١٩

20. ಮರ್ಯಮ್ ಹೇಳಿದರು: "ನನಗೆ ಪುತ್ರ ಉಂಟಾಗುವುದು ಹೇಗೆ? ಯಾವುದೇ ಮನುಷ್ಯನು ನನ್ನನ್ನು ಮುಟ್ಟಿಲ್ಲ. ನಾನು ಶೀಲಗೆಟ್ಟವಳೂ ಅಲ್ಲ."

قَالَتۡ أَنَّىٰ يَكُونُ لِي غُلَٰمٞ وَلَمۡ يَمۡسَسۡنِي بَشَرٞ وَلَمۡ أَكُ بَغِيّٗا ٢٠

21. ಜಿಬ್ರೀಲ್ ಹೇಳಿದರು: "ಸಂಗತಿ ನೀವು ಹೇಳಿದಂತೆಯೇ ಆಗಿದೆ. ಆದರೆ, ಅದು ನನಗೆ ಬಹಳ ಸುಲಭವಾಗಿದೆಯೆಂದು ನಿಮ್ಮ ಪರಿಪಾಲಕನು (ಅಲ್ಲಾಹು) ಹೇಳುತ್ತಾನೆ. ನಾವು ಆ ಮಗುವನ್ನು ಮನುಷ್ಯರಿಗೆ ಒಂದು ದೃಷ್ಟಾಂತವಾಗಿ ಮಾಡಲು ಬಯಸುತ್ತೇವೆ. ಆ ಮಗು ನಮ್ಮ ಕಡೆಯ ವಿಶೇಷ ದಯೆಯಾಗಿದ್ದಾರೆ. ಇದು ತೀರ್ಮಾನಿಸಲಾದ ಸಂಗತಿಯಾಗಿದೆ."

قَالَ كَذَٰلِكِ قَالَ رَبُّكِ هُوَ عَلَيَّ هَيِّنٞۖ وَلِنَجۡعَلَهُۥٓ ءَايَةٗ لِّلنَّاسِ وَرَحۡمَةٗ مِّنَّاۚ وَكَانَ أَمۡرٗا مَّقۡضِيّٗا ٢١

22. ಮರ್ಯಮ್ ಮಗುವಿನ ಗರ್ಭ ಧರಿಸಿದರು. ನಂತರ ಆ ಗರ್ಭದೊಂದಿಗೆ ವಿದೂರ ಸ್ಥಳದಲ್ಲಿ ವಾಸಿಸತೊಡಗಿದರು.

فَحَمَلَتۡهُ فَٱنتَبَذَتۡ بِهِۦ مَكَانٗا قَصِيّٗا ٢٢

23. ನಂತರ ಹೆರಿಗೆ ನೋವು ಅವರನ್ನು ಖರ್ಜೂರದ ಮರದ ಬಳಿಗೆ ತಲುಪಿಸಿತು. ಅವರು ಹೇಳಿದರು: "ಇದಕ್ಕಿಂತ ಮೊದಲೇ ನಾನು ತೀರಿ ಹೋಗಿದ್ದರೆ ಮತ್ತು ಜನರ ನೆನಪಿನಿಂದ ನಾನು ಸಂಪೂರ್ಣ ಮಾಸಿ ಹೋಗಿದ್ದರೆ ಎಷ್ಟು ಚೆನ್ನಾಗಿತ್ತು!"[2]

فَأَجَآءَهَا ٱلۡمَخَاضُ إِلَىٰ جِذۡعِ ٱلنَّخۡلَةِ قَالَتۡ يَٰلَيۡتَنِي مِتُّ قَبۡلَ هَٰذَا وَكُنتُ نَسۡيٗا مَّنسِيّٗا ٢٣

24. ಆಗ ಮರ್ಯಮರ ತಳಭಾಗದಿಂದ ಒಂದು ಕೂಗು ಕೇಳಿಸಿತು: "ಬೇಸರ ಪಡಬೇಡಿ! ನಿಮ್ಮ ಪರಿಪಾಲಕನು (ಅಲ್ಲಾಹು) ನಿಮ್ಮ ತಳಭಾಗದಲ್ಲಿ ಒಂದು ತೊರೆಯನ್ನು ಹರಿಸಿದ್ದಾನೆ.

فَنَادَىٰهَا مِن تَحۡتِهَآ أَلَّا تَحۡزَنِي قَدۡ جَعَلَ رَبُّكِ تَحۡتَكِ سَرِيّٗا ٢٤

25. ಖರ್ಜೂರದ ಮರವನ್ನು ನಿಮ್ಮ ಕಡೆಗೆ ಎಳೆದು ಕುಲುಕಿರಿ. ಆಗ ಅದು ನಿಮಗೆ ಹಣ್ಣಾದ ತಾಜಾ ಖರ್ಜೂರವನ್ನು ಬೀಳಿಸುತ್ತದೆ.

وَهُزِّيٓ إِلَيۡكِ بِجِذۡعِ ٱلنَّخۡلَةِ تُسَٰقِطۡ عَلَيۡكِ رُطَبٗا جَنِيّٗا ٢٥

26. ನೀವು ತಿನ್ನಿರಿ, ಕುಡಿಯಿರಿ ಮತ್ತು ಕಣ್ಮನ ತಣಿಸಿರಿ. ನೀವು ಯಾವುದೇ ಒಬ್ಬ ಮನುಷ್ಯನನ್ನು ಕಂಡರೆ, "ನಾನು ಪರಮ

فَكُلِي وَٱشۡرَبِي وَقَرِّي عَيۡنٗاۖ فَإِمَّا تَرَيِنَّ مِنَ ٱلۡبَشَرِ أَحَدٗا فَقُولِيٓ إِنِّي نَذَرۡتُ لِلرَّحۡمَٰنِ صَوۡمٗا

[1] ಮನುಷ್ಯರೂಪದಲ್ಲಿ ಬಂದದ್ದು ಜಿಬ್ರೀಲ್ ಎಂದು ಮರ್ಯಮರಿಗೆ ತಿಳಿಯಲಿಲ್ಲ.

[2] ನಾನು ಈ ಮಗುವನ್ನು ಹೆತ್ತರೆ ಜನರಿಗೆ ಏನು ಉತ್ತರ ಕೊಡಲಿ? ನನ್ನ ಮಾತನ್ನು ಅವರು ನಂಬುವರೇ? ಅವರನ್ನು ನಾನು ಹೇಗೆ ಸಮಾಧಾನಪಡಿಸಲಿ? ಎಂಬ ಚಿಂತೆಯಿಂದ ಅವರು ಈ ಮಾತು ಹೇಳಿದ್ದರು.

| | | |
|---|---|---|
| | ದಯಾಮಯನಿಗೆ (ಅಲ್ಲಾಹನಿಗೆ) ಉಪವಾಸದ ಹರಕೆ ಹೊತ್ತಿದ್ದೇನೆ. ಆದ್ದರಿಂದ ಇಂದು ನಾನು ಯಾವುದೇ ವ್ಯಕ್ತಿಯೊಡನೆ ಮಾತನಾಡುವುದಿಲ್ಲ" ಎಂದು ಹೇಳಿರಿ. | فَلَنْ أُكَلِّمَ ٱلْيَوْمَ إِنسِيًّا ٢٦ |
| 27. | ನಂತರ ಅವರು ಆ ಮಗುವನ್ನು ಹಿಡಿದುಕೊಂಡು ತಮ್ಮ ಜನರ ಬಳಿಗೆ ಬಂದರು. ಜನರು ಹೇಳಿದರು: "ಓ ಮರ್ಯಮ್! ನೀನು ಬಹಳ ಕೆಟ್ಟ ಕೆಲಸವನ್ನು ಮಾಡಿದ್ದೀಯಾ. | فَأَتَتْ بِهِۦ قَوْمَهَا تَحْمِلُهُۥ ۖ قَالُوا۟ يَٰمَرْيَمُ لَقَدْ<br>جِئْتِ شَيْـًٔا فَرِيًّا ٢٧ |
| 28. | ಓ ಹಾರೂನರ ಸಹೋದರೀ! ನಿನ್ನ ತಂದೆ ಕೆಟ್ಟ ಮನುಷ್ಯನಾಗಿರ-ಲಿಲ್ಲ. ನಿನ್ನ ತಾಯಿ ಶೀಲಗೆಟ್ಟ ಮಹಿಳೆಯಾಗಿರಲಿಲ್ಲ." | يَٰٓأُخْتَ هَٰرُونَ مَا كَانَ أَبُوكِ ٱمْرَأَ سَوْءٍ وَمَا<br>كَانَتْ أُمُّكِ بَغِيًّا ٢٨ |
| 29. | ಆಗ ಮರ್ಯಮ್ ಮಗುವಿನ ಕಡೆಗೆ ಸನ್ನೆ ಮಾಡಿದರು. ಜನರು ಕೇಳಿದರು: "ತೊಟ್ಟಿಲಲ್ಲಿರುವ ಮಗುವಿನೊಂದಿಗೆ ನಾವು ಮಾತನಾಡುವುದು ಹೇಗೆ?" | فَأَشَارَتْ إِلَيْهِ ۖ قَالُوا۟ كَيْفَ نُكَلِّمُ مَن كَانَ فِى<br>ٱلْمَهْدِ صَبِيًّا ٢٩ |
| 30. | ಮಗು ಹೇಳಿತು: "ನಾನು ಅಲ್ಲಾಹನ ದಾಸ. ಅವನು ನನಗೆ ಗ್ರಂಥವನ್ನು ನೀಡಿದ್ದಾನೆ ಮತ್ತು ನನ್ನನ್ನು ಪ್ರವಾದಿಯಾಗಿ ಮಾಡಿದ್ದಾನೆ. | قَالَ إِنِّى عَبْدُ ٱللَّهِ ءَاتَىٰنِىَ ٱلْكِتَٰبَ وَجَعَلَنِى<br>نَبِيًّا ٣٠ |
| 31. | ನಾನು ಎಲ್ಲೇ ಇದ್ದರೂ ಅವನು ನನ್ನನ್ನು ಸಮೃದ್ಧಿಯುಳ್ಳ-ವನಾಗಿ ಮಾಡಿದ್ದಾನೆ. ನಾನು ಜೀವಂತವಿರುವ ಕಾಲದ ತನಕ ನಮಾಝ್ ಮಾಡಲು ಮತ್ತು ಝಕಾತ್ ನೀಡಲು ಅವನು ನನಗೆ ಆಜ್ಞಾಪಿಸಿದ್ದಾನೆ. | وَجَعَلَنِى مُبَارَكًا أَيْنَ مَا كُنتُ وَأَوْصَٰنِى<br>بِٱلصَّلَوٰةِ وَٱلزَّكَوٰةِ مَا دُمْتُ حَيًّا ٣١ |
| 32. | ನನ್ನ ತಾಯಿಗೆ ಒಳಿತು ಮಾಡಲು (ನನಗೆ ಆಜ್ಞಾಪಿಸಿದ್ದಾನೆ). ಅವನು ನನ್ನನ್ನು ನಿರಂಕುಶ ಅಥವಾ ನತದೃಷ್ಟನನ್ನಾಗಿ ಮಾಡಿಲ್ಲ. | وَبَرًّۢا بِوَٰلِدَتِى وَلَمْ يَجْعَلْنِى جَبَّارًا شَقِيًّا ٣٢ |
| 33. | ನಾನು ಜನಿಸಿದ ದಿನ, ನಿಧನನಾಗುವ ದಿನ ಮತ್ತು ನನಗೆ ಜೀವ ನೀಡಿ ಎಬ್ಬಿಸಲಾಗುವ ದಿನ ನನ್ನ ಮೇಲೆ ಶಾಂತಿಯಿರುವುದು." | وَٱلسَّلَٰمُ عَلَىَّ يَوْمَ وُلِدتُّ وَيَوْمَ أَمُوتُ وَيَوْمَ<br>أُبْعَثُ حَيًّا ٣٣ |
| 34. | ಅವರೇ ಮರ್ಯಮರ ಮಗ ಈಸಾ (ಯೇಸು). ಜನರು ಸಂಶಯ-ಪಡುತ್ತಿರುವ ಆ ಸತ್ಯ ವಚನವು ಇದೇ ಆಗಿದೆ. | ذَٰلِكَ عِيسَى ٱبْنُ مَرْيَمَ ۚ قَوْلَ ٱلْحَقِّ ٱلَّذِى فِيهِ<br>يَمْتَرُونَ ٣٤ |
| 35. | ಒಬ್ಬ ಪುತ್ರನಿರುವುದು ಅಲ್ಲಾಹನಿಗೆ ಯೋಗ್ಯವಾದುದಲ್ಲ. ಅವನು ಪರಿಶುದ್ಧನು. ಅವನು ಯಾವುದೇ ವಿಷಯವನ್ನು ತೀರ್ಮಾನಿಸಿದರೆ ಅದರೊಂದಿಗೆ "ಉಂಟಾಗು" ಎಂದು ಮಾತ್ರ ಹೇಳುತ್ತಾನೆ. ತಕ್ಷಣ ಅದು ಉಂಟಾಗುತ್ತದೆ! | مَا كَانَ لِلَّهِ أَن يَتَّخِذَ مِن وَلَدٍ ۖ سُبْحَٰنَهُۥٓ ۚ إِذَا<br>قَضَىٰٓ أَمْرًا فَإِنَّمَا يَقُولُ لَهُۥ كُن فَيَكُونُ ٣٥ |
| 36. | (ಈಸಾ ಹೇಳಿದರು): "ನಿಶ್ಚಯವಾಗಿಯೂ ಅಲ್ಲಾಹನೇ ನನ್ನ ಮತ್ತು ನಿಮ್ಮ ಪರಿಪಾಲಕನು. ಆದ್ದರಿಂದ ಅವನನ್ನು ಮಾತ್ರ | وَإِنَّ ٱللَّهَ رَبِّى وَرَبُّكُمْ فَٱعْبُدُوهُ ۚ هَٰذَا صِرَٰطٌ<br>مُّسْتَقِيمٌ ٣٦ |

ಆರಾಧಿಸಿರಿ. ಇದೇ ನೇರವಾದ ಮಾರ್ಗ."

37. ನಂತರ ಅವರಲ್ಲಿನ ಗುಂಪುಗಳು ಪರಸ್ಪರ ಭಿನ್ನಮತ ತಳೆದರು.[1] ಆದ್ದರಿಂದ, ಒಂದು ಭಯಾನಕ ದಿನದ ಸಾನಿಧ್ಯದಿಂದಾಗಿ ಸತ್ಯನಿಷೇಧಿಗಳಿಗೆ ವಿನಾಶ ಕಾದಿದೆ.

فَٱخۡتَلَفَ ٱلۡأَحۡزَابُ مِنۢ بَيۡنِهِمۡۖ فَوَيۡلٞ لِّلَّذِينَ كَفَرُواْ مِن مَّشۡهَدِ يَوۡمٍ عَظِيمٍ ٣٧

38. ಅವರು ನಮ್ಮ ಬಳಿಗೆ ಬರುವ ಆ ದಿನದಂದು ಅವರ ಕೇಳುವ ಶಕ್ತಿ ಮತ್ತು ದೃಷ್ಟಿ ಎಷ್ಟು ಚೆನ್ನಾಗಿರುತ್ತದೆ! ಆದರೆ ಅಂದು ಆ ಅಕ್ರಮಿಗಳು ಸ್ಪಷ್ಟ ದುರ್ಮಾರ್ಗದಲ್ಲಿರುವರು.

أَسۡمِعۡ بِهِمۡ وَأَبۡصِرۡ يَوۡمَ يَأۡتُونَنَا لَٰكِنِ ٱلظَّٰلِمُونَ ٱلۡيَوۡمَ فِي ضَلَٰلٖ مُّبِينٖ ٣٨

39. (ಪ್ರವಾದಿಯವರೇ) ಆ ವಿಷಾದದ ದಿನದ (ಅಂತ್ಯದಿನದ) ಬಗ್ಗೆ ಅವರಿಗೆ ಎಚ್ಚರಿಕೆ ನೀಡಿರಿ. ಅಂದರೆ, ಎಲ್ಲಾ ವಿಷಯಗಳನ್ನು (ಅಂತಿಮವಾಗಿ) ತೀರ್ಮಾನಿಸಲಾಗುವ ಸಂದರ್ಭದ ಬಗ್ಗೆ. ಆದರೆ ಅವರು ನಿರ್ಲಕ್ಷ್ಯದಲ್ಲಿದ್ದಾರೆ. ಅವರು ವಿಶ್ವಾಸವಿಡುವುದಿಲ್ಲ.

وَأَنذِرۡهُمۡ يَوۡمَ ٱلۡحَسۡرَةِ إِذۡ قُضِيَ ٱلۡأَمۡرُ وَهُمۡ فِي غَفۡلَةٖ وَهُمۡ لَا يُؤۡمِنُونَ ٣٩

40. ನಿಶ್ಚಯವಾಗಿಯೂ ನಾವೇ ಭೂಮಿ ಮತ್ತು ಅದರಲ್ಲಿರುವ ಎಲ್ಲರ ಉತ್ತರಾಧಿಕಾರಿಗಳು. ಅವರನ್ನು ನಮ್ಮ ಬಳಿಗೇ ಮರಳಿಸಲಾಗುತ್ತದೆ.

إِنَّا نَحۡنُ نَرِثُ ٱلۡأَرۡضَ وَمَنۡ عَلَيۡهَا وَإِلَيۡنَا يُرۡجَعُونَ ٤٠

41. ಈ ಗ್ರಂಥದಲ್ಲಿ ಇಬ್ರಾಹೀಮರ ಬಗ್ಗೆ ತಿಳಿಸಿರಿ. ನಿಶ್ಚಯವಾಗಿಯೂ ಅವರು ಸತ್ಯವಂತರಾದ ಪ್ರವಾದಿಯಾಗಿದ್ದರು.

وَٱذۡكُرۡ فِي ٱلۡكِتَٰبِ إِبۡرَٰهِيمَۚ إِنَّهُۥ كَانَ صِدِّيقٗا نَّبِيًّا ٤١

42. ಅವರು ತಮ್ಮ ತಂದೆಯೊಡನೆ ಹೇಳಿದ ಸಂದರ್ಭ: "ಪ್ರೀತಿಯ ಅಪ್ಪಾ! ನೀವು ನಿಮ್ಮ ಮಾತನ್ನು ಕೇಳದ, ನಿಮ್ಮನ್ನು ನೋಡದ ಮತ್ತು ನಿಮಗೆ ಯಾವುದೇ ಉಪಕಾರ ಮಾಡದ ಈ ವಿಗ್ರಹಗಳನ್ನು ಏಕೆ ಆರಾಧಿಸುತ್ತೀರಿ?

إِذۡ قَالَ لِأَبِيهِ يَٰٓأَبَتِ لِمَ تَعۡبُدُ مَا لَا يَسۡمَعُ وَلَا يُبۡصِرُ وَلَا يُغۡنِي عَنكَ شَيۡـٔٗا ٤٢

43. ಪ್ರೀತಿಯ ಅಪ್ಪಾ! ನಿಜವಾಗಿಯೂ ನಿಮ್ಮ ಬಳಿ ಇಲ್ಲದ ಜ್ಞಾನವು ನನ್ನ ಬಳಿಗೆ ಬಂದಿದೆ. ಆದ್ದರಿಂದ ನಾನು ಹೇಳುವಂತೆ ಕೇಳಿರಿ. ನಾನು ನಿಮಗೆ ಸರಿಯಾದ ಮಾರ್ಗವನ್ನು ತೋರಿಸುತ್ತೇನೆ.

يَٰٓأَبَتِ إِنِّي قَدۡ جَآءَنِي مِنَ ٱلۡعِلۡمِ مَا لَمۡ يَأۡتِكَ فَٱتَّبِعۡنِيٓ أَهۡدِكَ صِرَٰطٗا سَوِيّٗا ٤٣

44. ಪ್ರೀತಿಯ ಅಪ್ಪಾ! ಶೈತಾನನನ್ನು ಆರಾಧಿಸಬೇಡಿ. ಶೈತಾನನು ಪರಮ ದಯಾಳುವಿಗೆ (ಅಲ್ಲಾಹನಿಗೆ) ಅವಿಧೇಯನಾಗಿದ್ದಾನೆ.

يَٰٓأَبَتِ لَا تَعۡبُدِ ٱلشَّيۡطَٰنَۖ إِنَّ ٱلشَّيۡطَٰنَ كَانَ لِلرَّحۡمَٰنِ عَصِيّٗا ٤٤

45. ಪ್ರೀತಿಯ ಅಪ್ಪಾ! ಪರಮ ದಯಾಳುವಿನ (ಅಲ್ಲಾಹನ)

يَٰٓأَبَتِ إِنِّيٓ أَخَافُ أَن يَمَسَّكَ عَذَابٞ مِّنَ

[1] ಗುಂಪುಗಳು ಎಂದರೆ ಯಹೂದಿಗಳು ಮತ್ತು ಕ್ರೈಸ್ತರಲ್ಲೇ ಇದ್ದಂತಹ ಅನೇಕ ಪಂಗಡಗಳು. ಯಹೂದಿಗಳು ಈಸಾ (ಯೇಸು) ರನ್ನು ಮಾಟಗಾರ ಮತ್ತು ವೇಶ್ಯೆಯ ಮಗ (ಅಲ್ಲಾಹು ಕಾಪಾಡಲಿ) ಎಂದು ಹೇಳಿದರು. ಕ್ರೈಸ್ತರಲ್ಲಿ ಸೇರಿದ ನೆಸ್ಟೋರಿಯನ್‌ಗಳು ಈಸಾರನ್ನು ದೇವಪುತ್ರ ಎಂದರು. ಕೆಥೋಲಿಕರು ಮೂರು ದೇವರುಗಳಲ್ಲಿ ಒಬ್ಬರು ಎಂದರು. ಆರ್ಥೋಡಾಕ್ಸ್‌ನವರು ಈಸಾರನ್ನು ದೇವರು ಎಂದೇ ಕರೆದರು. ಯಹೂದಿಗಳು ಈಸಾ (ಅವರ ಮೇಲೆ ಶಾಂತಿಯಿರಲಿ) ರನ್ನು ಅವರ ಸ್ಥಾನಕ್ಕಿಂತ ಕೆಳಗಿಳಿಸಿದರೆ, ಕ್ರೈಸ್ತರು ಅವರನ್ನು ಅವರ ಸ್ಥಾನದಿಂದ ಅಲ್ಲಾಹನ ಸ್ಥಾನಕ್ಕೇರಿಸಿದರು.

ಯಾವುದಾದರೂ ಶಿಕ್ಷೆಯು ನಿಮ್ಮ ಮೇಲೆರಗಬಹುದೆಂದು ನನಗೆ ಭಯವಾಗುತ್ತಿದೆ. ಹಾಗೇನಾದರೂ ಆದರೆ ನೀವು ಶೈತಾನನ ಮಿತ್ರನಾಗಿ ಬಿಡುವಿರಿ."

ٱلرَّحۡمَٰنِ فَتَكُونَ لِلشَّيۡطَٰنِ وَلِيّٗا ٤٥

---

46. ತಂದೆ ಹೇಳಿದನು: "ಇಬ್ರಾಹೀಮ್! ನೀನು ನನ್ನ ದೇವರುಗಳನ್ನು ತಿರಸ್ಕರಿಸುತ್ತಿರುವೆಯಾ? ನೀನು ಇದನ್ನು ನಿಲ್ಲಿಸದಿದ್ದರೆ ನಾನು ನಿನ್ನನ್ನು ಖಂಡಿತ ಕಲ್ಲೆಸೆದು ಓಡಿಸುವೆನು. ಹೋಗು! ಒಂದು ದೀರ್ಘಕಾಲದ ತನಕ ನನ್ನಿಂದ ದೂರವಿರು."

قَالَ أَرَاغِبٌ أَنتَ عَنۡ ءَالِهَتِي يَٰٓإِبۡرَٰهِيمُۖ لَئِن
لَّمۡ تَنتَهِ لَأَرۡجُمَنَّكَۖ وَٱهۡجُرۡنِي مَلِيّٗا ٤٦

---

47. ಇಬ್ರಾಹೀಮ್ ಹೇಳಿದರು: "ನಿಮ್ಮ ಮೇಲೆ ಶಾಂತಿಯಿರಲಿ! ನಾನು ನಿಮಗೋಸ್ಕರ ನನ್ನ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ಕ್ಷಮೆಯಾ-ಚಿಸುತ್ತೇನೆ. ನಿಶ್ಚಯವಾಗಿಯೂ ಅವನಿಗೆ ನನ್ನ ಮೇಲೆ ಬಹಳ ಅನುಕಂಪವಿದೆ.

قَالَ سَلَٰمٌ عَلَيۡكَۖ سَأَسۡتَغۡفِرُ لَكَ رَبِّيٓۖ إِنَّهُۥ كَانَ
بِي حَفِيّٗا ٤٧

---

48. ನಾನು ನಿಮ್ಮನ್ನು ಮತ್ತು ಅಲ್ಲಾಹನ ಹೊರತಾಗಿ ನೀವು ಕರೆದು ಪ್ರಾರ್ಥಿಸುವವರನ್ನು ಬಿಟ್ಟು ಹೋಗುತ್ತಿದ್ದೇನೆ. ನಾನು ನನ್ನ ಪರಿಪಾಲಕನನ್ನು (ಅಲ್ಲಾಹನನ್ನು) ಮಾತ್ರ ಕರೆದು ಪ್ರಾರ್ಥಿಸುತ್ತೇನೆ. ನನ್ನ ಪರಿಪಾಲಕನನ್ನು (ಅಲ್ಲಾಹನನ್ನು) ಕರೆದು ಪ್ರಾರ್ಥಿಸಿದರೆ ನಾನೆಂದೂ ನತದೃಷ್ಟನಾಗುವುದಿಲ್ಲ."

وَأَعۡتَزِلُكُمۡ وَمَا تَدۡعُونَ مِن دُونِ ٱللَّهِ
وَأَدۡعُواْ رَبِّي عَسَىٰٓ أَلَّآ أَكُونَ بِدُعَآءِ رَبِّي
شَقِيّٗا ٤٨

---

49. ಅವರು ತಂದೆಯನ್ನು ಮತ್ತು ಅಲ್ಲಾಹನ ಹೊರತಾಗಿ ಅವರು ಆರಾಧಿಸುತ್ತಿದ್ದವರನ್ನು ಬಿಟ್ಟು ತೆರಳಿದಾಗ ನಾವು ಅವರಿಗೆ ಇಸ್‌ಹಾಕ್ (ಮಗ) ಮತ್ತು ಯಅ್‌ಕೂಬ್ (ಮೊಮ್ಮಗ)ರನ್ನು ದಯಪಾಲಿಸಿದೆವು. ಅವರೆಲ್ಲರನ್ನೂ ನಾವು ಪ್ರವಾದಿಗಳನ್ನಾಗಿ ಮಾಡಿದೆವು.

فَلَمَّا ٱعۡتَزَلَهُمۡ وَمَا يَعۡبُدُونَ مِن دُونِ
ٱللَّهِ وَهَبۡنَا لَهُۥٓ إِسۡحَٰقَ وَيَعۡقُوبَۖ وَكُلّٗا
جَعَلۡنَا نَبِيّٗا ٤٩

---

50. ನಾವು ಅವರಿಗೆ ನಮ್ಮ ದಯೆಯಿಂದ ಕರುಣಿಸಿದೆವು. ನಾವು ಅವರ ಕೀರ್ತಿಯನ್ನು ಉನ್ನತಗೊಳಿಸಿದೆವು.

وَوَهَبۡنَا لَهُم مِّن رَّحۡمَتِنَا وَجَعَلۡنَا لَهُمۡ لِسَانَ
صِدۡقٍ عَلِيّٗا ٥٠

---

51. ಈ ಗ್ರಂಥದಲ್ಲಿ ಮೂಸಾರ ಬಗ್ಗೆ ತಿಳಿಸಿರಿ. ನಿಜಕ್ಕೂ ಅವರು ನಿಷ್ಕಳಂಕರಾಗಿದ್ದರು. ಅವರು ಸಂದೇಶವಾಹಕರು ಮತ್ತು ಪ್ರವಾದಿಯಾಗಿದ್ದರು.

وَٱذۡكُرۡ فِي ٱلۡكِتَٰبِ مُوسَىٰٓۚ إِنَّهُۥ كَانَ مُخۡلَصٗا
وَكَانَ رَسُولٗا نَّبِيّٗا ٥١

---

52. ತೂರ್ ಪರ್ವತದ ಬಲಭಾಗದಿಂದ ನಾವು ಅವರನ್ನು ಕರೆದೆವು ಮತ್ತು ಆಪ್ತ ಸಂಭಾಷಣೆ ಮಾಡಲು ನಾವು ಅವರನ್ನು ಹತ್ತಿರಗೊಳಿಸಿದೆವು.

وَنَٰدَيۡنَٰهُ مِن جَانِبِ ٱلطُّورِ ٱلۡأَيۡمَنِ وَقَرَّبۡنَٰهُ
نَجِيّٗا ٥٢

---

53. ನಮ್ಮ ದಯೆಯಿಂದ ನಾವು ಅವರಿಗೆ ಅವರ ಸಹೋದರ ಹಾರೂನರನ್ನು ಪ್ರವಾದಿಯಾಗಿ ಮಾಡಿದೆವು.

وَوَهَبۡنَا لَهُۥ مِن رَّحۡمَتِنَآ أَخَاهُ هَٰرُونَ نَبِيّٗا ٥٣

| | | |
|---|---|---|
| 54. | ಈ ಗ್ರಂಥದಲ್ಲಿ ಇಸ್ಮಾಈಲರ ಬಗ್ಗೆ ತಿಳಿಸಿರಿ. ನಿಜಕ್ಕೂ ಅವರು ವಾಗ್ದಾನಗಳನ್ನು ನೆರವೇರಿಸುತ್ತಿದ್ದರು. ಅವರು ಸಂದೇಶವಾಹಕರು ಮತ್ತು ಪ್ರವಾದಿಯಾಗಿದ್ದರು. | وَٱذۡكُرۡ فِي ٱلۡكِتَٰبِ إِسۡمَٰعِيلَۚ إِنَّهُۥ كَانَ صَادِقَ ٱلۡوَعۡدِ وَكَانَ رَسُولٗا نَّبِيّٗا ﴿٥٤﴾ |
| 55. | ಅವರು ತಮ್ಮ ಮನೆಯವರಿಗೆ ನಮಾಝ್ ಮಾಡಲು ಮತ್ತು ಝಕಾತ್ ನೀಡಲು ಆಜ್ಞಾಪಿಸುತ್ತಿದ್ದರು. ಅವರು ತಮ್ಮ ಪರಿಪಾಲಕನ (ಅಲ್ಲಾಹನ) ಪ್ರೀತಿಗೆ ಪಾತ್ರರಾಗಿದ್ದರು. | وَكَانَ يَأۡمُرُ أَهۡلَهُۥ بِٱلصَّلَوٰةِ وَٱلزَّكَوٰةِ وَكَانَ عِندَ رَبِّهِۦ مَرۡضِيّٗا ﴿٥٥﴾ |
| 56. | ಈ ಗ್ರಂಥದಲ್ಲಿ ಇದ್ರೀಸರ ಬಗ್ಗೆ ತಿಳಿಸಿರಿ. ನಿಜಕ್ಕೂ ಅವರು ಸತ್ಯವಂತ ಪ್ರವಾದಿಯಾಗಿದ್ದರು. | وَٱذۡكُرۡ فِي ٱلۡكِتَٰبِ إِدۡرِيسَۚ إِنَّهُۥ كَانَ صِدِّيقٗا نَّبِيّٗا ﴿٥٦﴾ |
| 57. | ನಾವು ಅವರನ್ನು ಉನ್ನತ ದರ್ಜೆಗೇರಿಸಿದೆವು. | وَرَفَعۡنَٰهُ مَكَانًا عَلِيًّا ﴿٥٧﴾ |
| 58. | ಇವರೆಲ್ಲರೂ ಅಲ್ಲಾಹು ಅನುಗ್ರಹಿಸಿದ ಪ್ರವಾದಿಗಳಾಗಿದ್ದಾರೆ. ಅವರು ಆದಮರ ಸಂತಾನದಲ್ಲಿ, ನೂಹರೊಡನೆ ನಾವು ನಾವೆಯಲ್ಲಿ ಏರಿಸಿದವರಲ್ಲಿ ಮತ್ತು ಇಬ್ರಾಹೀಮ್ ಹಾಗೂ ಇಸ್ರಾಈಲರ ಸಂತಾನದಲ್ಲಿ ಸೇರಿದವರಾಗಿದ್ದಾರೆ. ಅವರೆಲ್ಲರೂ ನಾವು ಸನ್ಮಾರ್ಗದಲ್ಲಿ ಸೇರಿಸಿ ವಿಶೇಷವಾಗಿ ಆರಿಸಿದವರಲ್ಲಿ ಸೇರಿ-ದವರಾಗಿದ್ದಾರೆ. ಅವರಿಗೆ ಪರಮ ದಯಾಮಯನ (ಅಲ್ಲಾಹನ) ವಚನಗಳನ್ನು ಓದಿಕೊಡಲಾದರೆ ಅವರು ಸಾಷ್ಟಾಂಗ ಮಾಡುತ್ತಾ ಅಳುತ್ತಾ ಬೀಳುತ್ತಾರೆ. | أُوْلَٰٓئِكَ ٱلَّذِينَ أَنۡعَمَ ٱللَّهُ عَلَيۡهِم مِّنَ ٱلنَّبِيِّـۧنَ مِن ذُرِّيَّةِ ءَادَمَ وَمِمَّنۡ حَمَلۡنَا مَعَ نُوحٖ وَمِن ذُرِّيَّةِ إِبۡرَٰهِيمَ وَإِسۡرَٰٓءِيلَ وَمِمَّنۡ هَدَيۡنَا وَٱجۡتَبَيۡنَآۚ إِذَا تُتۡلَىٰ عَلَيۡهِمۡ ءَايَٰتُ ٱلرَّحۡمَٰنِ خَرُّواْۤ سُجَّدٗا وَبُكِيّٗا ﴿٥٨﴾ |
| 59. | ಅವರ ನಂತರ ಅವರ ಸ್ಥಾನದಲ್ಲಿ ಬೇರೊಂದು ತಲೆಮಾರು ಬಂತು. ಅವರು ನಮಾಝನ್ನು ಹಾಳು ಮಾಡಿದರು ಮತ್ತು ಸ್ವೇಚ್ಛೆಗಳನ್ನು ಹಿಂಬಾಲಿಸಿದರು. ಅವರು ತಮ್ಮ ದುಷ್ಕರ್ಮದ ಫಲವನ್ನು ಉಣ್ಣುವರು. | فَخَلَفَ مِنۢ بَعۡدِهِمۡ خَلۡفٌ أَضَاعُواْ ٱلصَّلَوٰةَ وَٱتَّبَعُواْ ٱلشَّهَوَٰتِۖ فَسَوۡفَ يَلۡقَوۡنَ غَيًّا ﴿٥٩﴾ |
| 60. | ಆದರೆ ಪಶ್ಚಾತ್ತಾಪಪಟ್ಟವರು, ವಿಶ್ವಾಸವಿಟ್ಟವರು ಹಾಗೂ ಸತ್ಕರ್ಮವೆಸಗಿದವರು ಇದರಿಂದ ಹೊರತಾಗಿದ್ದಾರೆ. ಅವರು ಸ್ವರ್ಗವನ್ನು ಪ್ರವೇಶಿಸುವರು. ಅವರಿಗೆ ಸ್ವಲ್ಪವೂ ಅನ್ಯಾಯವಾಗುವುದಿಲ್ಲ. | إِلَّا مَن تَابَ وَءَامَنَ وَعَمِلَ صَٰلِحٗا فَأُوْلَٰٓئِكَ يَدۡخُلُونَ ٱلۡجَنَّةَ وَلَا يُظۡلَمُونَ شَيۡـٔٗا ﴿٦٠﴾ |
| 61. | ಶಾಶ್ವತ ವಾಸಕ್ಕಿರುವ ಸ್ವರ್ಗೋದ್ಯಾನಗಳನ್ನು. ಇದು ಪರಮ ದಯಾಮಯನು (ಅಲ್ಲಾಹು) ತನ್ನ ದಾಸರಿಗೆ ಅದೃಶ್ಯರೂಪದಲ್ಲಿ ವಾಗ್ದಾನ ಮಾಡಿದ್ದಾಗಿದೆ. ನಿಶ್ಚಯವಾಗಿಯೂ ಅವನ ವಾಗ್ದಾನವು ಜಾರಿಯಾಗಿಯೇ ತೀರುತ್ತದೆ. | جَنَّٰتِ عَدۡنٍ ٱلَّتِي وَعَدَ ٱلرَّحۡمَٰنُ عِبَادَهُۥ بِٱلۡغَيۡبِۚ إِنَّهُۥ كَانَ وَعۡدُهُۥ مَأۡتِيّٗا ﴿٦١﴾ |
| 62. | ಅಲ್ಲಿ ಅವರು ಯಾವುದೇ ಅನಗತ್ಯ ಮಾತುಗಳನ್ನು ಕೇಳುವುದಿಲ್ಲ. ಶಾಂತಿ ಶಾಂತಿ ಎಂಬ ಮಾತುಗಳನ್ನಲ್ಲದೆ. ಅಲ್ಲಿ ಅವರಿಗೆ | لَّا يَسۡمَعُونَ فِيهَا لَغۡوًا إِلَّا سَلَٰمٗاۖ وَلَهُمۡ رِزۡقُهُمۡ |

ಅವರ ಆಹಾರವನ್ನು ಮುಂಜಾನೆ ಮತ್ತು ಮುಸ್ಸಂಜೆಗಳಲ್ಲಿ ಒದಗಿಸಲಾಗುವುದು. | فِيهَا بُكْرَةً وَعَشِيًّا ﴿٦٢﴾

63. ಇದೇ ನಾವು ನಮ್ಮ ದಾಸರಲ್ಲಿ ದೇವಭಯವುಳ್ಳವರಿಗೆ ಉತ್ತರಾಧಿ-ಕಾರವಾಗಿ ನೀಡುವ ಸ್ವರ್ಗ. | تِلْكَ ٱلْجَنَّةُ ٱلَّتِى نُورِثُ مِنْ عِبَادِنَا مَن كَانَ تَقِيًّا ﴿٦٣﴾

64. (ಜಿಬ್ರೀಲ್ ಹೇಳಿದರು): "ನಿಮ್ಮ ಪರಿಪಾಲಕನ (ಅಲ್ಲಾಹನ) ಆಜ್ಞೆಯಿಲ್ಲದೆ ನಾವು ಇಳಿಯುವುದಿಲ್ಲ. ನಮ್ಮ ಮುಂಭಾಗದಲ್ಲಿ, ಹಿಂಭಾಗದಲ್ಲಿ ಮತ್ತು ಅವುಗಳ ನಡುವೆಯಿರುವ ಎಲ್ಲವೂ ಅವನಿಗೆ ಸೇರಿದ್ದು. ನಿಮ್ಮ ಪರಿಪಾಲಕನು (ಅಲ್ಲಾಹು) ಮರೆಯುವವನಲ್ಲ." | وَمَا نَتَنَزَّلُ إِلَّا بِأَمْرِ رَبِّكَ ۖ لَهُۥ مَا بَيْنَ أَيْدِينَا وَمَا خَلْفَنَا وَمَا بَيْنَ ذَٰلِكَ ۚ وَمَا كَانَ رَبُّكَ نَسِيًّا ﴿٦٤﴾

65. ಅವನು ಭೂಮ್ಯಾಕಾಶಗಳ ಮತ್ತು ಅವುಗಳ ನಡುವೆಯಿರುವ ಎಲ್ಲಾ ವಸ್ತುಗಳ ಪರಿಪಾಲಕ. ಆದ್ದರಿಂದ ಅವನನ್ನು ಮಾತ್ರ ಆರಾಧಿಸಿರಿ ಮತ್ತು ಅವನ ಆರಾಧನೆಯಲ್ಲಿ ತಾಳ್ಮೆಯಿಂದಿರಿ. ಅವನಿಗೆ ಸರಿಸಾಟಿಯಾಗಿ ಯಾರಾದರೂ ಇರುವುದು ನಿಮಗೆ ತಿಳಿದಿದೆಯೇ? | رَّبُّ ٱلسَّمَٰوَٰتِ وَٱلْأَرْضِ وَمَا بَيْنَهُمَا فَٱعْبُدْهُ وَٱصْطَبِرْ لِعِبَٰدَتِهِۦ ۚ هَلْ تَعْلَمُ لَهُۥ سَمِيًّا ﴿٦٥﴾

66. ಮನುಷ್ಯನು ಹೇಳುತ್ತಾನೆ: "ನಾನು ಸತ್ತರೆ ನನ್ನನ್ನು ಪುನಃ ಜೀವಂತಗೊಳಿಸಿ ಹೊರತರಲಾಗುತ್ತದೆಯೇ?" | وَيَقُولُ ٱلْإِنسَٰنُ أَءِذَا مَا مِتُّ لَسَوْفَ أُخْرَجُ حَيًّا ﴿٦٦﴾

67. ಆದರೆ ಮನುಷ್ಯನಿಗೆ ಅಸ್ತಿತ್ವವೇ ಇಲ್ಲದಿದ್ದಾಗ ನಾವು ಅವನನ್ನು ಪ್ರಥಮ ಬಾರಿ ಸೃಷ್ಟಿಸಿದ್ದು ಅವನಿಗೆ ನೆನಪಿಲ್ಲವೇ? | أَوَلَا يَذْكُرُ ٱلْإِنسَٰنُ أَنَّا خَلَقْنَٰهُ مِن قَبْلُ وَلَمْ يَكُ شَيْـًٔا ﴿٦٧﴾

68. ನಿಮ್ಮ ಪರಿಪಾಲಕನ (ಅಲ್ಲಾಹನ) ಮೇಲಾಣೆ! ನಾವು ಖಂಡಿತವಾಗಿಯೂ ಅವರನ್ನು ಮತ್ತು ಶೈತಾನರನ್ನು ಒಟ್ಟುಗೂಡಿಸಿ, ನಂತರ ಅವರನ್ನು ಮೊಣಕಾಲೂರಿದ ಸ್ಥಿತಿಯಲ್ಲಿ ನರಕದ ಸುತ್ತಲೂ ಹಾಜರುಪಡಿಸುವೆವು. | فَوَرَبِّكَ لَنَحْشُرَنَّهُمْ وَٱلشَّيَٰطِينَ ثُمَّ لَنُحْضِرَنَّهُمْ حَوْلَ جَهَنَّمَ جِثِيًّا ﴿٦٨﴾

69. ನಂತರ ಎಲ್ಲಾ ಗುಂಪುಗಳಿಂದಲೂ ಪರಮ ದಯಾಮಯನಿಗೆ (ಅಲ್ಲಾಹನಿಗೆ) ಕಡು ದ್ರೋಹವೆಸಗಿದವರನ್ನು ಎಳೆದು ಬೇರ್ಪಡಿಸುವೆವು. | ثُمَّ لَنَنزِعَنَّ مِن كُلِّ شِيعَةٍ أَيُّهُمْ أَشَدُّ عَلَى ٱلرَّحْمَٰنِ عِتِيًّا ﴿٦٩﴾

70. ನಂತರ ನರಕದಲ್ಲಿ ಉರಿಯಲು ಅವರಲ್ಲಿ ಅತ್ಯಂತ ಅರ್ಹರು ಯಾರೆಂದು ನಮಗೆ ಬಹಳ ಚೆನ್ನಾಗಿ ತಿಳಿದಿದೆ. | ثُمَّ لَنَحْنُ أَعْلَمُ بِٱلَّذِينَ هُمْ أَوْلَىٰ بِهَا صِلِيًّا ﴿٧٠﴾

71. ನಿಮ್ಮಲ್ಲಿ ಪ್ರತಿಯೊಬ್ಬರೂ ಅದರ (ನರಕದ) ಬಳಿಗೆ ಬರುವರು. ಅದು ತಮ್ಮ ಪರಿಪಾಲಕನ (ಅಲ್ಲಾಹನ) ಖಚಿತ ಹಾಗೂ | وَإِن مِّنكُمْ إِلَّا وَارِدُهَا ۚ كَانَ عَلَىٰ رَبِّكَ حَتْمًا مَّقْضِيًّا ﴿٧١﴾

ಬದಲಾವಣೆಯಿಲ್ಲದ ತೀರ್ಮಾನವಾಗಿದೆ.[1]

---

72. ನಂತರ ನಾವು ದೇವಭಯವುಳ್ಳವರನ್ನು ರಕ್ಷಿಸಿ, ಅಕ್ರಮವೆಸಗಿದ-ವರನ್ನು ಮೊಣಕಾಲೂರಿದ ಸ್ಥಿತಿಯಲ್ಲಿ ಅಲ್ಲೇ ಬಿಟ್ಟುಬಿಡುವೆವು.

ثُمَّ نُنَجِّي ٱلَّذِينَ ٱتَّقَواْ وَّنَذَرُ ٱلظَّٰلِمِينَ فِيهَا جِثِيًّا ﴿٧٢﴾

---

73. ನಮ್ಮ ಸ್ಪಷ್ಟ ಸಾಕ್ಷ್ಯಾಧಾರಗಳನ್ನು ಅವರಿಗೆ ಓದಿಕೊಡಲಾದರೆ, ಸತ್ಯನಿಷೇಧಿಗಳು ಸತ್ಯವಿಶ್ವಾಸಿಗಳೊಡನೆ ಹೇಳುತ್ತಾರೆ: "ಸ್ಥಾನಮಾನ ಮತ್ತು ಜನಬಲದ ದೃಷ್ಟಿಯಲ್ಲಿ ನಮ್ಮ ಈ ಎರಡು ಗುಂಪುಗಳಲ್ಲಿ ಯಾರು ಶ್ರೇಷ್ಠರು?"[2]

وَإِذَا تُتۡلَىٰ عَلَيۡهِمۡ ءَايَٰتُنَا بَيِّنَٰتٖ قَالَ ٱلَّذِينَ كَفَرُواْ لِلَّذِينَ ءَامَنُوٓاْ أَيُّ ٱلۡفَرِيقَيۡنِ خَيۡرٞ مَّقَامٗا وَأَحۡسَنُ نَدِيّٗا ﴿٧٣﴾

---

74. ನಾವು ಅವರಿಗಿಂತ ಮೊದಲು ಎಷ್ಟೋ ತಲೆಮಾರುಗಳನ್ನು ನಾಶ ಮಾಡಿದ್ದೇವೆ. ಅವರು ಸವಲತ್ತುಗಳು ಮತ್ತು ದೇಹದಾರ್ಢ್ಯದಲ್ಲಿ ಇವರಿಗಿಂತಲೂ ಶ್ರೇಷ್ಠರಾಗಿದ್ದರು.

وَكَمۡ أَهۡلَكۡنَا قَبۡلَهُم مِّن قَرۡنٍ هُمۡ أَحۡسَنُ أَثَٰثٗا وَرِءۡيٗا ﴿٧٤﴾

---

75. ಹೇಳಿರಿ: "ಯಾರು ದುರ್ಮಾರ್ಗದಲ್ಲಿದ್ದಾನೋ ಅವನಿಗೆ ಪರಮ ದಯಾಮಯನು (ಅಲ್ಲಾಹು) ಅವಧಿಯನ್ನು ವಿಸ್ತರಿಸಿಕೊಡಲಿ. ಎಲ್ಲಿಯವರೆಗೆಂದರೆ, ಅವರು ತಮಗೆ ಎಚ್ಚರಿಕೆ ನೀಡಲಾದ ಸಂಗತಿಯನ್ನು—ಅಂದರೆ ಒಂದೋ ಶಿಕ್ಷೆಯನ್ನು ಅಥವಾ ಅಂತ್ಯ-ಸಮಯವನ್ನು—ಕಾಣುವಾಗ, ಅತಿನಿಕೃಷ್ಟ ಸ್ಥಾನಮಾನವಿ-ರುವವರು ಮತ್ತು ಅತಿ ದುರ್ಬಲ ಜನಬಲವು ಯಾರದ್ದೆಂದು ಅವರು ಬಹಳ ಚೆನ್ನಾಗಿ ತಿಳಿಯುವರು."

قُلۡ مَن كَانَ فِي ٱلضَّلَٰلَةِ فَلۡيَمۡدُدۡ لَهُ ٱلرَّحۡمَٰنُ مَدًّاۚ حَتَّىٰٓ إِذَا رَأَوۡاْ مَا يُوعَدُونَ إِمَّا ٱلۡعَذَابَ وَإِمَّا ٱلسَّاعَةَ فَسَيَعۡلَمُونَ مَنۡ هُوَ شَرّٞ مَّكَانٗا وَأَضۡعَفُ جُندٗا ﴿٧٥﴾

---

76. ಸನ್ಮಾರ್ಗದಲ್ಲಿರುವವರಿಗೆ ಅಲ್ಲಾಹು ಸನ್ಮಾರ್ಗವನ್ನು ಹೆಚ್ಚಿಸಿಕೊಡುವನು. ಆದರೆ ಬಾಕಿಯಾಗುವ ಸತ್ಕರ್ಮಗಳು ತಮ್ಮ ಪರಿಪಾಲಕನ (ಅಲ್ಲಾಹನ) ದೃಷ್ಟಿಯಲ್ಲಿ ಅತ್ಯುತ್ತಮ ಪ್ರತಿಫಲವನ್ನು ಮತ್ತು ಅತ್ಯುತ್ತಮ ಫಲಿತಾಂಶವನ್ನು ಹೊಂದಿವೆ.

وَيَزِيدُ ٱللَّهُ ٱلَّذِينَ ٱهۡتَدَوۡاْ هُدٗىۗ وَٱلۡبَٰقِيَٰتُ ٱلصَّٰلِحَٰتُ خَيۡرٌ عِندَ رَبِّكَ ثَوَابٗا وَخَيۡرٞ مَّرَدًّا ﴿٧٦﴾

---

77. ನಮ್ಮ ದೃಷ್ಟಾಂತಗಳನ್ನು ನಿಷೇಧಿಸಿದವನನ್ನು ನೀವು ನೋಡಿದ್ದೀರಾ?[3] ಅವನು ಹೇಳಿದನು: "ನನಗೆ ಖಂಡಿತ ಸಂಪತ್ತು

أَفَرَءَيۡتَ ٱلَّذِي كَفَرَ بِـَٔايَٰتِنَا وَقَالَ لَأُوتَيَنَّ مَالٗا وَوَلَدًا ﴿٧٧﴾

---

[1] ನರಕದ ಮೇಲ್ಭಾಗದಲ್ಲಿ ಒಂದು ಸೇತುವೆಯನ್ನು ನಿರ್ಮಿಸಲಾಗುವುದು. ಸತ್ಯವಿಶ್ವಾಸಿಗಳು ಮತ್ತು ಸತ್ಯನಿಷೇಧಿಗಳೆಲ್ಲರೂ ಆ ಸೇತುವೆಯನ್ನು ದಾಟಲು ಪ್ರಯತ್ನಿಸುವರು. ಸತ್ಯವಿಶ್ವಾಸಿಗಳು ತಮ್ಮ ತಮ್ಮ ಕರ್ಮಗಳಿಗೆ ಅನುಗುಣವಾಗಿ ಆ ಸೇತುವೆಯನ್ನು ದಾಟುವರು. ಕೆಲವರು ಕಣ್ಣೆವೆಯಿ-ಕ್ಕುವ ವೇಗದಲ್ಲಿ, ಕೆಲವರು ಮಿಂಚಿನ ವೇಗದಲ್ಲಿ, ಕೆಲವರು ಹಕ್ಕಿ ಹಾರುವ ವೇಗದಲ್ಲಿ, ಕೆಲವರು ಕುದುರೆಗಳ ವೇಗದಲ್ಲಿ ದಾಟುವರು. ದುಷ್ಕ-ರ್ಮಿಗಳಾದ ಸತ್ಯವಿಶ್ವಾಸಿಗಳು ದಾಟಲು ಸಾಧ್ಯವಾಗದೆ ನರಕದಲ್ಲಿ ಬೀಳುವರು. ಅವರನ್ನು ನಂತರ ಶಿಫಾರಸು ಮಾಡುವ ಮೂಲಕ ಅಥವಾ ಅವರ ಶಿಕ್ಷೆ ಮುಗಿದ ಬಳಿಕ ನರಕದಿಂದ ಪಾರು ಮಾಡಲಾಗುವುದು. ಆದರೆ ಸತ್ಯನಿಷೇಧಿಗಳಿಗೆ ಆ ಸೇತುವೆಯನ್ನು ದಾಟಲು ಸಾಧ್ಯವಾಗದೆ ಎಲ್ಲರೂ ನರಕದಲ್ಲಿ ಬೀಳುವರು. ಅದರಲ್ಲೇ ಶಾಶ್ವತವಾಗಿ ವಾಸಿಸುವರು.

[2] ಮಕ್ಕಾದಲ್ಲಿರುವ ಸತ್ಯವಿಶ್ವಾಸಿಗಳು ಮತ್ತು ಸತ್ಯನಿಷೇಧಿಗಳ ಪೈಕಿ ಅತ್ಯಧಿಕ ಸ್ಥಾನಮಾನ ಮತ್ತು ಜನಬಲವುಳ್ಳವರು ಯಾರೆಂದು ಸತ್ಯವಿಶ್ವಾ-ಸಿಗಳನ್ನು ಲೇವಡಿ ಮಾಡುತ್ತಾ ಸತ್ಯನಿಷೇಧಿಗಳು ಕೇಳುತ್ತಿದ್ದರು. ಏಕೆಂದರೆ, ಮಕ್ಕಾದ ಮುಖಂಡರು ಮತ್ತು ಶ್ರೀಮಂತರಲ್ಲಿ ಹೆಚ್ಚಿನವರೂ ಸತ್ಯನಿಷೇಧಿಗಳಾಗಿದ್ದರು.

[3] ಈತ ಇಸ್ಲಾಂ ಧರ್ಮದ ಕಡುವೈರಿಯಾಗಿದ್ದ ಆಸ್ ಬಿನ್ ವಾಯಿಲ್. ಕಮ್ಮಾರ ಕೆಲಸ ಮಾಡುತ್ತಿದ್ದ ಖಬ್ಬಾಬ್ ಬಿನ್ ಅರತ್ ಇಸ್ಲಾಂ ಸ್ವೀಕರಿಸಿದರು.

ಮತ್ತು ಸಂತಾನವನ್ನು ನೀಡಲಾಗುತ್ತದೆ.”

| | | |
|---|---|---|
| 78. | ಅವನು ಅದೃಶ್ಯ ವಿಷಯಗಳನ್ನು ತಿಳಿದುಕೊಂಡನೇ? ಅಥವಾ ಪರಮ ದಯಾಮಯನ (ಅಲ್ಲಾಹನ) ಬಳಿ ಯಾವುದಾದರೂ ಕರಾರು ಮಾಡಿದ್ದಾನೆಯೇ? | أَطَّلَعَ ٱلۡغَيۡبَ أَمِ ٱتَّخَذَ عِندَ ٱلرَّحۡمَٰنِ عَهۡدٗا ﴿٧٨﴾ |
| 79. | ಖಂಡಿತ ಇಲ್ಲ, ಅವನು ಹೇಳುವುದನ್ನು ನಾವು ದಾಖಲಿಸಿಡುತ್ತೇವೆ ಮತ್ತು ಅವನಿಗೆ ಶಿಕ್ಷೆಯನ್ನು ಹೆಚ್ಚಿಸುತ್ತಲೇ ಇರುತ್ತೇವೆ. | كَلَّاۚ سَنَكۡتُبُ مَا يَقُولُ وَنَمُدُّ لَهُۥ مِنَ ٱلۡعَذَابِ مَدّٗا ﴿٧٩﴾ |
| 80. | ಅವನು ಹೇಳುತ್ತಿರುವ ವಿಷಯಗಳನ್ನು (ಸಂಪತ್ತು ಮತ್ತು ಸಂತಾನವನ್ನು) ಅವನ ಮರಣಾನಂತರ ನಾವು ಉತ್ತರಾಧಿಕಾರವಾಗಿ ಪಡೆಯುವೆವು. ಅವನು ನಮ್ಮ ಬಳಿಗೆ ಒಂಟಿಯಾಗಿಯೇ ಬರುವನು. | وَنَرِثُهُۥ مَا يَقُولُ وَيَأۡتِينَا فَرۡدٗا ﴿٨٠﴾ |
| 81. | ಅವರು ಅಲ್ಲಾಹನನ್ನು ಬಿಟ್ಟು ಬೇರೆ ದೇವರುಗಳನ್ನು ಸ್ವೀಕರಿಸಿದ್ದಾರೆ. ಅವರಿಂದ ಇವರಿಗೆ ಪ್ರತಿಷ್ಠೆಯುಂಟಾಗಲು! | وَٱتَّخَذُواْ مِن دُونِ ٱللَّهِ ءَالِهَةٗ لِّيَكُونُواْ لَهُمۡ عِزّٗا ﴿٨١﴾ |
| 82. | ಖಂಡಿತ ಇಲ್ಲ, (ಪುನರುತ್ಥಾನ ದಿನದಂದು) ಅವರು ಇವರು ಮಾಡಿದ ಆರಾಧನೆಗಳನ್ನು ನಿಷೇಧಿಸುವರು ಮತ್ತು ಇವರಿಗೆ ವಿರುದ್ಧವಾಗಿ ನಿಲ್ಲುವರು. | كَلَّاۚ سَيَكۡفُرُونَ بِعِبَادَتِهِمۡ وَيَكُونُونَ عَلَيۡهِمۡ ضِدًّا ﴿٨٢﴾ |
| 83. | ನಾವು ಸತ್ಯನಿಷೇಧಿಗಳ ಬಳಿಗೆ, ಅವರನ್ನು ಉತ್ತೇಜಿಸಲು ಶೈತಾನರನ್ನು ಕಳುಹಿಸಿದ್ದನ್ನು ನೀವು ನೋಡಿಲ್ಲವೇ? | أَلَمۡ تَرَ أَنَّآ أَرۡسَلۡنَا ٱلشَّيَٰطِينَ عَلَى ٱلۡكَٰفِرِينَ تَؤُزُّهُمۡ أَزّٗا ﴿٨٣﴾ |
| 84. | ಆದ್ದರಿಂದ ಅವರ ವಿಷಯದಲ್ಲಿ ತ್ವರೆ ಮಾಡಬೇಡಿ. ನಾವು ಸ್ವತಃ ಅವರಿಗೆ ಅವಧಿಯನ್ನು ಎಣಿಸುತ್ತಿದ್ದೇವೆ! | فَلَا تَعۡجَلۡ عَلَيۡهِمۡۖ إِنَّمَا نَعُدُّ لَهُمۡ عَدّٗا ﴿٨٤﴾ |
| 85. | ನಾವು ದೇವಭಯವುಳ್ಳವರನ್ನು ಪರಮ ದಯಾಮಯನ (ಅಲ್ಲಾಹನ) ಬಳಿಯಲ್ಲಿ ಗಣ್ಯ ಅತಿಥಿಗಳಾಗಿ ಒಟ್ಟುಗೂಡಿಸುವ ದಿನ! | يَوۡمَ نَحۡشُرُ ٱلۡمُتَّقِينَ إِلَى ٱلرَّحۡمَٰنِ وَفۡدٗا ﴿٨٥﴾ |
| 86. | ನಾವು ಅಪರಾಧಿಗಳನ್ನು ಅತಿಯಾಗಿ ಬಾಯಾರಿದ ಸ್ಥಿತಿಯಲ್ಲಿ ನರಕಕ್ಕೆ ಸಾಗಿಸುವೆವು. | وَنَسُوقُ ٱلۡمُجۡرِمِينَ إِلَىٰ جَهَنَّمَ وِرۡدٗا ﴿٨٦﴾ |
| 87. | ಪರಮ ದಯಾಮಯನಿಂದ (ಅಲ್ಲಾಹನಿಂದ) ಸ್ಪಷ್ಟ ಕರಾರು ಪಡೆದವರಿಗಲ್ಲದೆ ಇನ್ನಾರಿಗೂ ಅಂದು ಶಿಫಾರಸು ಮಾಡುವ | لَّا يَمۡلِكُونَ ٱلشَّفَٰعَةَ إِلَّا مَنِ ٱتَّخَذَ عِندَ ٱلرَّحۡمَٰنِ عَهۡدٗا ﴿٨٧﴾ |

---

ಅವರಿಗೆ ಆಸ್ ಬಿನ್ ವಾಯಿಲ್ ನಿಂದ ಹಣ ಬರಬೇಕಿತ್ತು. ಅವರು ಅದನ್ನು ಕೇಳಿದಾಗ ಆಸ್ ಬಿನ್ ವಾಯಿಲ್ ಹೇಳಿದ: “ನೀನು ಮುಹಮ್ಮದರನ್ನು ನಿಷೇಧಿಸಿದರೆ ಮಾತ್ರ ನಿನ್ನ ಹಣವನ್ನು ಕೊಡುತ್ತೇನೆ.” ಖಬ್ಬಾಬ್ ಹೇಳಿದರು: “ನೀನು ಇನ್ನೊಂದು ಜನ್ಮವೆತ್ತಿ ಬಂದರೂ ಅದು ಸಾಧ್ಯವಿಲ್ಲ.” ಆಗ ಆಸ್ ಹೇಳಿದ: “ನಾನು ಸತ್ತ ನಂತರ ಪುನಃ ನನಗೆ ಜೀವ ನೀಡಿ ಎಬ್ಬಿಸಲಾದರೂ ಅಲ್ಲಿ ನನಗೆ ಹೇರಳ ಐಶ್ವರ್ಯ ಮತ್ತು ಮಕ್ಕಳನ್ನು ನೀಡಿ ಆಶೀರ್ವದಿಸಲಾಗುವುದು.” ಅವನ ಅಹಂಕಾರದ ಮಾತುಗಳನ್ನು ಖಂಡಿಸುತ್ತಾ ಈ ವಚನಗಳು ಅವತೀರ್ಣವಾದವು.

ಅಧಿಕಾರವಿಲ್ಲ.[1]

88. ಅವರು ಹೇಳಿದರು: “ಪರಮ ದಯಾಮಯನಿಗೆ (ಅಲ್ಲಾಹನಿಗೆ) ಒಬ್ಬ ಪುತ್ರನಿದ್ದಾನೆ.”

وَقَالُواْ ٱتَّخَذَ ٱلرَّحۡمَٰنُ وَلَدٗا ﴿٨٨﴾

89. ನಿಶ್ಚಯವಾಗಿಯೂ ನೀವು ಒಂದು ಘೋರ ಸಂಗತಿಯನ್ನೇ ತಂದಿದ್ದೀರಿ.

لَّقَدۡ جِئۡتُمۡ شَيۡـًٔا إِدّٗا ﴿٨٩﴾

90. ಅದರಿಂದ ಇನ್ನೇನು ಆಕಾಶಗಳು ಒಡೆದು ಛಿದ್ರವಾಗಿ, ಭೂಮಿ ಬಿರುಕು ಬಿಟ್ಟು, ಪರ್ವತಗಳು ಪುಡಿಪುಡಿಯಾಗಿ ಬೀಳಬಹುದು.

تَكَادُ ٱلسَّمَٰوَٰتُ يَتَفَطَّرۡنَ مِنۡهُ وَتَنشَقُّ ٱلۡأَرۡضُ وَتَخِرُّ ٱلۡجِبَالُ هَدًّا ﴿٩٠﴾

91. ಪರಮ ದಯಾಮಯನಿಗೆ (ಅಲ್ಲಾಹನಿಗೆ) ಒಬ್ಬ ಪುತ್ರನಿದ್ದಾನೆಂದು ಅವರು ವಾದಿಸಿದ ಕಾರಣ.

أَن دَعَوۡاْ لِلرَّحۡمَٰنِ وَلَدٗا ﴿٩١﴾

92. ಒಬ್ಬ ಪುತ್ರನಿರುವುದು ಪರಮ ದಯಾಮಯನಿಗೆ (ಅಲ್ಲಾಹನಿಗೆ) ಯೋಗ್ಯವಾದುದಲ್ಲ.

وَمَا يَنۢبَغِي لِلرَّحۡمَٰنِ أَن يَتَّخِذَ وَلَدًا ﴿٩٢﴾

93. ಭೂಮ್ಯಾಕಾಶಗಳಲ್ಲಿರುವ ಎಲ್ಲರೂ ಪರಮ ದಯಾಮಯನ (ಅಲ್ಲಾಹನ) ಬಳಿಗೆ ದಾಸರಾಗಿರುವ ಸ್ಥಿತಿಯಲ್ಲೇ ಬರುವರು.

إِن كُلُّ مَن فِي ٱلسَّمَٰوَٰتِ وَٱلۡأَرۡضِ إِلَّآ ءَاتِي ٱلرَّحۡمَٰنِ عَبۡدٗا ﴿٩٣﴾

94. ಅವನಿಗೆ ಅವರ ಸಂಖ್ಯೆಯ ಬಗ್ಗೆ ಪೂರ್ಣ ಮಾಹಿತಿಯಿದೆ ಮತ್ತು ಅವನು ಅವರೆಲ್ಲರನ್ನೂ ನಿಖರವಾಗಿ ಎಣಿಸಿಟ್ಟಿದ್ದಾನೆ.

لَّقَدۡ أَحۡصَىٰهُمۡ وَعَدَّهُمۡ عَدّٗا ﴿٩٤﴾

95. ಪುನರುತ್ಥಾನ ದಿನದಂದು ಅವರೆಲ್ಲರೂ ಅವನ ಬಳಿಗೆ ಏಕಾಂಗಿಯಾಗಿ ಬರುವರು.

وَكُلُّهُمۡ ءَاتِيهِ يَوۡمَ ٱلۡقِيَٰمَةِ فَرۡدًا ﴿٩٥﴾

96. ನಿಶ್ಚಯವಾಗಿಯೂ, ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ—ಅವರಿಗೆ ಪರಮ ದಯಾಮಯನು (ಅಲ್ಲಾಹು) ಪ್ರೀತಿಯನ್ನು ಉಂಟುಮಾಡುವನು.[2]

إِنَّ ٱلَّذِينَ ءَامَنُواْ وَعَمِلُواْ ٱلصَّٰلِحَٰتِ سَيَجۡعَلُ لَهُمُ ٱلرَّحۡمَٰنُ وُدّٗا ﴿٩٦﴾

97. ನಿಶ್ಚಯವಾಗಿಯೂ, ನಾವು ಇದನ್ನು (ಕುರ್‌ಆನನ್ನು) ನಿಮ್ಮ ಭಾಷೆಯಲ್ಲಿಯೇ ಸುಲಭಗೊಳಿಸಿದ್ದೇವೆ. ನೀವು ಇದರ ಮೂಲಕ

فَإِنَّمَا يَسَّرۡنَٰهُ بِلِسَانِكَ لِتُبَشِّرَ بِهِ ٱلۡمُتَّقِينَ وَتُنذِرَ بِهِۦ قَوۡمٗا لُّدّٗا ﴿٩٧﴾

---

[1] ಅಂದರೆ ಸತ್ಯವಿಶ್ವಾಸಿಗಳು ಮತ್ತು ದೇವಭಯವುಳ್ಳವರಿಗೆ ಮಾತ್ರ ಶಿಫಾರಸು ಮಾಡುವ ಅಧಿಕಾರ ದೊರೆಯುವುದು. ಅಲ್ಲಾಹು ಇಚ್ಛಿಸುವವರಿಗೆ ಮಾತ್ರ ಅವರು ಶಿಫಾರಸು ಮಾಡುವರು.

[2] ಅಂದರೆ ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗುವವರ ಹೃದಯದಲ್ಲಿ ಅಲ್ಲಾಹು ಅವನ ಬಗ್ಗೆ ಪ್ರೀತಿಯುಂಟಾಗುವಂತೆ ಮಾಡುವನು. ಅಲ್ಲಾಹನನ್ನು ಯಾರು ಪ್ರೀತಿಸುತ್ತಾರೋ ಅವರನ್ನು ಅಲ್ಲಾಹು ಪ್ರೀತಿಸುವನು. ಅಲ್ಲಾಹು ಯಾರನ್ನಾದರೂ ಪ್ರೀತಿಸಿದರೆ ಜಿಬ್ರೀಲರನ್ನು (ಅವರ ಮೇಲೆ ಶಾಂತಿಯಿರಲಿ) ಕರೆದು ಹೇಳುವನು: “ನಾನು ಇಂತಿಂತಹ ವ್ಯಕ್ತಿಯನ್ನು ಪ್ರೀತಿಸಿದ್ದೇನೆ. ನೀನು ಕೂಡ ಅವನನ್ನು ಪ್ರೀತಿಸು.” ಆಗ ಜಿಬ್ರೀಲ್ (ಅವರ ಮೇಲೆ ಶಾಂತಿಯಿರಲಿ) ಕೂಡ ಅವನನ್ನು ಪ್ರೀತಿಸುವರು. ನಂತರ ಅವರು ಆಕಾಶಲೋಕದಲ್ಲಿರುವ ಎಲ್ಲಾ ದೇವದೂತರುಗಳನ್ನು ಕರೆದು ಹೇಳುವರು: “ಅಲ್ಲಾಹು ಇಂತಿಂತಹ ವ್ಯಕ್ತಿಯನ್ನು ಪ್ರೀತಿಸಿದ್ದಾನೆ. ಆದ್ದರಿಂದ ನೀವು ಕೂಡ ಅವನನ್ನು ಪ್ರೀತಿಸಿರಿ.” ಆಗ ಆಕಾಶಲೋಕದಲ್ಲಿರುವವರೆಲ್ಲರೂ ಅವನನ್ನು ಪ್ರೀತಿಸುವರು. ಆಕಾಶಲೋಕದಲ್ಲಿರುವವರ ಪ್ರೀತಿ ಲಭ್ಯವಾಗುವುದರೊಂದಿಗೆ ಆ ವ್ಯಕ್ತಿಗೆ ಭೂಮಿಯಲ್ಲಿ ಅಂಗೀಕಾರ ಮತ್ತು ಶ್ಲಾಘನೆಯು ಲಭ್ಯವಾಗುವುದು.

ದೇವಭಯವುಳ್ಳವರಿಗೆ ಸುವಾರ್ತೆಯನ್ನು ನೀಡಲು ಮತ್ತು
ಹಿಂಸಾವಾದಿ ಜನರಿಗೆ ಇದರ ಮೂಲಕ ಎಚ್ಚರಿಕೆಯನ್ನು ನೀಡಲು.

---

98. ನಾವು ಅವರಿಗಿಂತ ಮೊದಲು ಎಷ್ಟೋ ತಲೆಮಾರುಗಳನ್ನು ನಾಶ ಮಾಡಿದ್ದೇವೆ. ನೀವು ಅವರಲ್ಲಿ ಯಾರಾದರೊಬ್ಬ-ರನ್ನು ಕಾಣುತ್ತಿದ್ದೀರಾ? ಅಥವಾ ಅವರ ಕೀರಲು ಧ್ವನಿಯನ್ನು ಕೇಳುತ್ತಿದ್ದೀರಾ?

وَكَمْ أَهْلَكْنَا قَبْلَهُم مِّن قَرْنٍ هَلْ تُحِسُّ مِنْهُم مِّنْ أَحَدٍ أَوْ تَسْمَعُ لَهُمْ رِكْزًا ﴿٩٨﴾

# 20. ತ್ವಾಹಾ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

---

1. ತ್ವಾಹಾ

طه ﴿١﴾

---

2. (ಪ್ರವಾದಿಯವರೇ) ನಿಮಗೆ ಕಷ್ಟವಾಗಬೇಕೆಂದು ನಾವು ಈ ಕುರ್‌ಆನನ್ನು ನಿಮಗೆ ಅವತೀರ್ಣಗೊಳಿಸಿಲ್ಲ.

مَآ أَنزَلۡنَا عَلَيۡكَ ٱلۡقُرۡءَانَ لِتَشۡقَىٰٓ ﴿٢﴾

---

3. ದೇವಭಯವುಳ್ಳವರಿಗೆ ಒಂದು ಉಪದೇಶವಾಗಿ ಮಾತ್ರ (ಇದನ್ನು ಅವತೀರ್ಣಗೊಳಿಸಿದ್ದೇವೆ).

إِلَّا تَذۡكِرَةً لِّمَن يَخۡشَىٰ ﴿٣﴾

---

4. ಭೂಮಿ ಮತ್ತು ಅತ್ಯುನ್ನತ ಆಕಾಶಗಳನ್ನು ಸೃಷ್ಟಿಸಿದ (ಅಲ್ಲಾಹನ) ಕಡೆಯಿಂದ ಇದು ಅವತೀರ್ಣವಾಗಿದೆ.

تَنزِيلًا مِّمَّنۡ خَلَقَ ٱلۡأَرۡضَ وَٱلسَّمَٰوَٰتِ ٱلۡعُلَى ﴿٤﴾

---

5. ಪರಮ ದಯಾಮಯನು (ಅಲ್ಲಾಹು) ಸಿಂಹಾಸನದಲ್ಲಿ ಆರೂಢನಾಗಿದ್ದಾನೆ.

ٱلرَّحۡمَٰنُ عَلَى ٱلۡعَرۡشِ ٱسۡتَوَىٰ ﴿٥﴾

---

6. ಭೂಮ್ಯಾಕಾಶಗಳಲ್ಲಿ, ಅವುಗಳ ನಡುವೆ ಮತ್ತು ಭೂಮಿಯ ಅಡಿಯಲ್ಲಿರುವುದೆಲ್ಲವೂ ಅವನಿಗೆ ಸೇರಿದ್ದು.

لَهُۥ مَا فِي ٱلسَّمَٰوَٰتِ وَمَا فِي ٱلۡأَرۡضِ وَمَا بَيۡنَهُمَا وَمَا تَحۡتَ ٱلثَّرَىٰ ﴿٦﴾

---

7. ನೀವು ಜೋರಾಗಿ ಮಾತನಾಡಿದರೂ—ನಿಶ್ಚಯವಾಗಿಯೂ ಅವನು ರಹಸ್ಯವಾಗಿರುವುದನ್ನು ಮತ್ತು ನಿಗೂಢವಾಗಿರುವುದನ್ನು ತಿಳಿಯುತ್ತಾನೆ.

وَإِن تَجۡهَرۡ بِٱلۡقَوۡلِ فَإِنَّهُۥ يَعۡلَمُ ٱلسِّرَّ وَأَخۡفَى ﴿٧﴾

---

8. ಅವನೇ ಅಲ್ಲಾಹು, ಅವನ ಹೊರತು ಆರಾಧನೆಗೆ ಅರ್ಹರಾದ ಬೇರೆ ದೇವರಿಲ್ಲ. ಅವನಿಗೆ ಅತ್ಯುತ್ತಮವಾದ ಹೆಸರುಗಳಿವೆ.

ٱللَّهُ لَآ إِلَٰهَ إِلَّا هُوَۖ لَهُ ٱلۡأَسۡمَآءُ ٱلۡحُسۡنَىٰ ﴿٨﴾

---

9. ಮೂಸಾರ ಸಮಾಚಾರವು ನಿಮಗೆ ತಲುಪಿದೆಯೇ?

وَهَلۡ أَتَىٰكَ حَدِيثُ مُوسَىٰٓ ﴿٩﴾

---

10. ಅವರು ಒಂದು ಬೆಂಕಿಯನ್ನು ಕಂಡ ಸಂದರ್ಭ. ಅವರು ತಮ್ಮ ಮನೆಯವರೊಡನೆ ಹೇಳಿದರು: "ನೀವಿಲ್ಲೇ ಇರಿ. ನನಗೆ (ದೂರದಲ್ಲಿ) ಬೆಂಕಿ ಕಾಣುತ್ತಿದೆ. ನಾನು ಅದರಿಂದ

إِذۡ رَءَا نَارًا فَقَالَ لِأَهۡلِهِ ٱمۡكُثُوٓاْ إِنِّيٓ ءَانَسۡتُ نَارًا لَّعَلِّيٓ ءَاتِيكُم مِّنۡهَا بِقَبَسٍ أَوۡ أَجِدُ عَلَى

ಏನಾದರೂ ಉರಿಸಿಕೊಂಡು ಬರುತ್ತೇನೆ. ಅಥವಾ ಬೆಂಕಿಯ ಬಳಿ ಯಾವುದಾದರೂ ದಾರಿಯನ್ನು ನೋಡುತ್ತೇನೆ."

ٱلنَّارِ هُدٗى ﴿١٠﴾

11. ಅವರು ಅಲ್ಲಿಗೆ ತಲುಪಿದಾಗ ಒಂದು ಧ್ವನಿಯುಂಟಾಯಿತು: "ಓ ಮೂಸಾ!

فَلَمَّآ أَتَىٰهَا نُودِيَ يَٰمُوسَىٰٓ ﴿١١﴾

12. ನಾನೇ ನಿಮ್ಮ ಪರಿಪಾಲಕ. ನೀವು ನಿಮ್ಮ ಚಪ್ಪಲಿಯನ್ನು ಕಳಚಿಡಿ. ನೀವು 'ತುವಾ' ಎಂಬ ಪವಿತ್ರ ಕಣಿವೆಯಲ್ಲಿದ್ದೀರಿ.

إِنِّيٓ أَنَا۠ رَبُّكَ فَٱخۡلَعۡ نَعۡلَيۡكَ إِنَّكَ بِٱلۡوَادِ ٱلۡمُقَدَّسِ طُوٗى ﴿١٢﴾

13. ನಾನು ನಿಮ್ಮನ್ನು ಆರಿಸಿದ್ದೇನೆ. ಆದ್ದರಿಂದ ನಿಮಗೆ ನೀಡಲಾಗುವ ದೇವವಾಣಿಯನ್ನು ಕಿವಿಗೊಟ್ಟು ಕೇಳಿ.

وَأَنَا ٱخۡتَرۡتُكَ فَٱسۡتَمِعۡ لِمَا يُوحَىٰٓ ﴿١٣﴾

14. ನಿಶ್ಚಯವಾಗಿಯೂ ನಾನೇ ಅಲ್ಲಾಹು. ನನ್ನ ಹೊರತು ಆರಾಧನೆಗೆ ಅರ್ಹರಾದ ಬೇರೆ ದೇವರಿಲ್ಲ. ಆದ್ದರಿಂದ ನನ್ನನ್ನು ಮಾತ್ರ ಆರಾಧಿಸಿರಿ ಮತ್ತು ನನ್ನ ನೆನಪಿಗಾಗಿ ನಮಾಝನ್ನು ಸಂಸ್ಥಾಪಿಸಿರಿ.

إِنَّنِيٓ أَنَا ٱللَّهُ لَآ إِلَٰهَ إِلَّآ أَنَا۠ فَٱعۡبُدۡنِي وَأَقِمِ ٱلصَّلَوٰةَ لِذِكۡرِيٓ ﴿١٤﴾

15. ನಿಶ್ಚಯವಾಗಿಯೂ ಅಂತ್ಯಸಮಯವು ಸಂಭವಿಸಿಯೇ ತೀರುತ್ತದೆ. ಪ್ರತಿಯೊಬ್ಬರಿಗೂ ಅವರು ಮಾಡಿದ ಪರಿಶ್ರಮಗಳಿಗೆ ಪ್ರತಿಫಲವನ್ನು ನೀಡುವುದಕ್ಕೋಸ್ಕರ ನಾನು ಅದನ್ನು ಗೋಪ್ಯವಾಗಿಡಲು ಬಯಸುತ್ತೇನೆ.

إِنَّ ٱلسَّاعَةَ ءَاتِيَةٌ أَكَادُ أُخۡفِيهَا لِتُجۡزَىٰ كُلُّ نَفۡسِۭ بِمَا تَسۡعَىٰ ﴿١٥﴾

16. ಆದ್ದರಿಂದ ಅದರಲ್ಲಿ ನಂಬಿಕೆಯಿಲ್ಲದವರು ಮತ್ತು ತಮ್ಮ ಸ್ವೇಚ್ಛೆಗಳನ್ನು ಹಿಂಬಾಲಿಸಿದವರು ಯಾರೋ ಅವರು ನಿಮ್ಮನ್ನು ಅದರಲ್ಲಿ ದೃಢವಿಶ್ವಾಸವಿಡದಂತೆ ತಡೆಯದಿರಲಿ. ಹಾಗೇನಾದರೂ ಆದರೆ ನೀವು ನಾಶವಾಗಿ ಬಿಡುವಿರಿ.

فَلَا يَصُدَّنَّكَ عَنۡهَا مَن لَّا يُؤۡمِنُ بِهَا وَٱتَّبَعَ هَوَىٰهُ فَتَرۡدَىٰ ﴿١٦﴾

17. ಓ ಮೂಸಾ! ನಿಮ್ಮ ಬಲಗೈಯಲ್ಲಿರುವುದೇನು?"

وَمَا تِلۡكَ بِيَمِينِكَ يَٰمُوسَىٰ ﴿١٧﴾

18. ಮೂಸಾ ಹೇಳಿದರು: "ಇದು ನನ್ನ ಕೋಲು. ಇದನ್ನು ಆಧಾರವಾಗಿಟ್ಟು ನಾನು ನಿಲ್ಲುತ್ತೇನೆ. ಇದರಿಂದ ನಾನು ನನ್ನ ಕುರಿಗಳಿಗೆ ಎಲೆಗಳನ್ನು ಉದುರಿಸುತ್ತೇನೆ. ಇದರಲ್ಲಿ ನನಗೆ ಬೇರೆ ಪ್ರಯೋಜನಗಳೂ ಇವೆ."

قَالَ هِيَ عَصَايَ أَتَوَكَّؤُاْ عَلَيۡهَا وَأَهُشُّ بِهَا عَلَىٰ غَنَمِي وَلِيَ فِيهَا مَـَٔارِبُ أُخۡرَىٰ ﴿١٨﴾

19. ಅಲ್ಲಾಹು ಹೇಳಿದನು: "ಓ ಮೂಸಾ! ಆ ಕೋಲನ್ನು ಕೆಳಗೆಸೆಯಿರಿ."

قَالَ أَلۡقِهَا يَٰمُوسَىٰ ﴿١٩﴾

20. ಮೂಸಾ ಅದನ್ನು ಕೆಳಗೆಸೆದರು. ಆಗ ಅಗೋ! ಅದು ಸರ್ಪವಾಗಿ ಮಾರ್ಪಟ್ಟು ಓಡತೊಡಗಿತು.

فَأَلۡقَىٰهَا فَإِذَا هِيَ حَيَّةٞ تَسۡعَىٰ ﴿٢٠﴾

21. ಅಲ್ಲಾಹು ಹೇಳಿದನು: "ಅದನ್ನು ಹಿಡಿಯಿರಿ. ಭಯಪಡಬೇಡಿ. ನಾವು ಅದನ್ನು ಅದರ ಹಿಂದಿನ ರೂಪಕ್ಕೆ ಮರಳಿಸುತ್ತೇವೆ.

قَالَ خُذۡهَا وَلَا تَخَفۡۖ سَنُعِيدُهَا سِيرَتَهَا ٱلۡأُولَىٰ ﴿٢١﴾

| | | |
|---|---|---|
| 22. | ನಿಮ್ಮ ಕೈಯನ್ನು ನಿಮ್ಮ ಕಂಕುಳದಲ್ಲಿಡಿ. ಅದು ಬೆಳ್ಳಗೆ ಹೊಳೆಯುತ್ತಾ ಹೊರಬರುತ್ತದೆ. ಅದರಲ್ಲಿ ಯಾವುದೇ ದೋಷವಿರುವುದಿಲ್ಲ. ಇದು ಇನ್ನೊಂದು ದೃಷ್ಟಾಂತವಾಗಿದೆ. | وَٱضۡمُمۡ يَدَكَ إِلَىٰ جَنَاحِكَ تَخۡرُجۡ بَيۡضَآءَ مِنۡ غَيۡرِ سُوٓءٍ ءَايَةً أُخۡرَىٰ ٢٢ |
| 23. | ನಿಮಗೆ ನಮ್ಮ ಮಹಾ ದೃಷ್ಟಾಂತಗಳಲ್ಲಿ ಸೇರಿದ ಕೆಲವನ್ನು ತೋರಿ-ಸಿಕೊಡುವುದಕ್ಕಾಗಿ (ಹೀಗೆ ಮಾಡುತ್ತಿದ್ದೇವೆ). | لِنُرِيَكَ مِنۡ ءَايَٰتِنَا ٱلۡكُبۡرَى ٢٣ |
| 24. | ನೀವು ಫರೋಹನ ಬಳಿಗೆ ಹೋಗಿ. ಖಂಡಿತವಾಗಿಯೂ ಅವನು ಅತಿರೇಕಿಯಾಗಿದ್ದಾನೆ.” | ٱذۡهَبۡ إِلَىٰ فِرۡعَوۡنَ إِنَّهُۥ طَغَىٰ ٢٤ |
| 25. | ಮೂಸಾ ಹೇಳಿದರು: “ನನ್ನ ಪರಿಪಾಲಕನೇ! ನನಗೆ ನನ್ನ ಹೃದಯವನ್ನು ತೆರೆದುಕೊಡು. | قَالَ رَبِّ ٱشۡرَحۡ لِي صَدۡرِي ٢٥ |
| 26. | ನನಗೆ ನನ್ನ ಕೆಲಸವನ್ನು ಸುಲಭಗೊಳಿಸು. | وَيَسِّرۡ لِيٓ أَمۡرِي ٢٦ |
| 27. | ನನ್ನ ನಾಲಗೆಯಯಿಂದ ಕಟ್ಟುಗಳನ್ನು ಬಿಚ್ಚಿ ಹಾಕು.[1] | وَٱحۡلُلۡ عُقۡدَةٗ مِّن لِّسَانِي ٢٧ |
| 28. | ಜನರು ನನ್ನ ಮಾತನ್ನು ಅರ್ಥಮಾಡಿಕೊಳ್ಳುವುದಕ್ಕಾಗಿ. | يَفۡقَهُواْ قَوۡلِي ٢٨ |
| 29. | ನನಗೆ ನನ್ನ ಕುಟುಂಬದಿಂದಲೇ ಒಬ್ಬ ಸಹಾಯಕನನ್ನು ನಿಶ್ಚಯಿಸು. | وَٱجۡعَل لِّي وَزِيرٗا مِّنۡ أَهۡلِي ٢٩ |
| 30. | ನನ್ನ ಸಹೋದರ ಹಾರೂನನನ್ನು. | هَٰرُونَ أَخِي ٣٠ |
| 31. | ಅವನಿಂದ ನನ್ನ ಶಕ್ತಿಯನ್ನು ಬಲಪಡಿಸು. | ٱشۡدُدۡ بِهِۦٓ أَزۡرِي ٣١ |
| 32. | ನನ್ನ ಕೆಲಸದಲ್ಲಿ ಅವನನ್ನು ಪಾಲುದಾರನಾಗಿ ಮಾಡು. | وَأَشۡرِكۡهُ فِيٓ أَمۡرِي ٣٢ |
| 33. | ನಾವು ಹೇರಳವಾಗಿ ನಿನ್ನ ಪರಿಶುದ್ಧತೆಯನ್ನು ಕೊಂಡಾಡಲು. | كَيۡ نُسَبِّحَكَ كَثِيرٗا ٣٣ |
| 34. | ಮತ್ತು ನಿನ್ನನ್ನು ಹೇರಳವಾಗಿ ಸ್ಮರಿಸಲು. | وَنَذۡكُرَكَ كَثِيرًا ٣٤ |
| 35. | ನಿಶ್ಚಯವಾಗಿಯೂ ನೀನು ನಮ್ಮ ಕ್ಷೇಮವನ್ನು ನೋಡಿಕೊಳ್ಳುವವನಾಗಿರುವೆ.” | إِنَّكَ كُنتَ بِنَا بَصِيرٗا ٣٥ |
| 36. | ಅಲ್ಲಾಹು ಹೇಳಿದನು: “ಓ ಮೂಸಾ! ನೀವು ಕೇಳಿದ್ದೆಲ್ಲವನ್ನೂ ನಿಮಗೆ ನೀಡಲಾಗಿದೆ. | قَالَ قَدۡ أُوتِيتَ سُؤۡلَكَ يَٰمُوسَىٰ ٣٦ |
| 37. | ನಾವು ನಿಮಗೆ ಬೇರೊಂದು ಸಂದರ್ಭದಲ್ಲೂ ದೊಡ್ಡ ಉಪಕಾರ ಮಾಡಿದ್ದೆವು. | وَلَقَدۡ مَنَنَّا عَلَيۡكَ مَرَّةً أُخۡرَىٰٓ ٣٧ |
| 38. | ನಿಮಗೆ ಈಗ ತಿಳಿಸಲಾಗುವ (ಈ ಕೆಳಗಿನ) ವಿಷಯವನ್ನು ನಾವು | إِذۡ أَوۡحَيۡنَآ إِلَىٰٓ أُمِّكَ مَا يُوحَىٰٓ ٣٨ |

[1] ಮೂಸಾ (ಅವರ ಮೇಲೆ ಶಾಂತಿಯಿರಲಿ) ತೊದಲುತ್ತಾ ಮಾತನಾಡುತ್ತಿದ್ದರು.

ನಿಮ್ಮ ತಾಯಿಗೆ ತೋಚುವಂತೆ ಮಾಡಿದ ಸಂದರ್ಭ.

39. ಆ ಮಗುವನ್ನು (ಮೂಸಾರನ್ನು) ಒಂದು ಪೆಟ್ಟಿಗೆಯಲ್ಲಿಟ್ಟು ಹೊಳೆಗೆ ಎಸೆಯಿರಿ. ಹೊಳೆಯು ಆ ಪೆಟ್ಟಿಗೆಯನ್ನು ದಡಕ್ಕೆ ಒಯ್ಯುತ್ತದೆ. ಆಗ ನನ್ನ ಮತ್ತು ಆ ಮಗುವಿನ ವೈರಿ ಆ ಮಗುವನ್ನು ಎತ್ತಿಕೊಳ್ಳುವನು. (ಓ ಮೂಸಾ) ನಾನು ನನ್ನ ಕಡೆಯ ವಿಶೇಷ ಪ್ರೀತಿಯನ್ನು ನಿಮ್ಮ ಮೇಲೆ ಇಟ್ಟಿದ್ದೆನು. ನೀವು ನನ್ನ ಕಣ್ಣುಗಳ ಮುಂದೆ ಬೆಳೆದು ದೊಡ್ಡವನಾಗುವುದಕ್ಕಾಗಿ.

أَنِ ٱقۡذِفِيهِ فِي ٱلتَّابُوتِ فَٱقۡذِفِيهِ فِي ٱلۡيَمِّ
فَلۡيُلۡقِهِ ٱلۡيَمُّ بِٱلسَّاحِلِ يَأۡخُذۡهُ عَدُوّٞ لِّي وَعَدُوّٞ
لَّهُۥۚ وَأَلۡقَيۡتُ عَلَيۡكَ مَحَبَّةٗ مِّنِّي وَلِتُصۡنَعَ عَلَىٰ
عَيۡنِيٓ ٣٩

40. ನಿಮ್ಮ ಸಹೋದರಿ ನಡೆಯುತ್ತಾ ಬಂದ ಸಂದರ್ಭ. ಅವಳು ಹೇಳಿದಳು: "ಈ ಮಗುವಿನ ಲಾಲನೆ-ಪಾಲನೆ ಮಾಡುವ ಒಬ್ಬರನ್ನು ನಾನು ನಿಮಗೆ ತೋರಿಸಿಕೊಡಲೇ?" ಹೀಗೆ ನಾವು ನಿಮ್ಮನ್ನು ನಿಮ್ಮ ತಾಯಿಗೆ ಹಿಂದಿರುಗಿಸಿದೆವು. ಆಕೆಯ ಕಣ್ಮನ ತಣಿಯುವುದಕ್ಕಾಗಿ ಮತ್ತು ಆಕೆ ದುಃಖಪಡದಿರುವುದಕ್ಕಾಗಿ. ನೀವು ಒಬ್ಬ ವ್ಯಕ್ತಿಯನ್ನು ಕೊಂದಿರಿ. ಆಗ ನಾವು ನಿಮ್ಮನ್ನು ಆ ಸಂಕಟದಿಂದ ಪಾರು ಮಾಡಿದೆವು. ನಾವು ನಿಮ್ಮನ್ನು ಅನೇಕ ವಿಧಗಳಿಂದ ಪರೀಕ್ಷಿಸಿದೆವು. ನಂತರ ನೀವು ಮದ್ಯನ್ ಗೋತ್ರದವರೊಡನೆ ಹಲವಾರು ವರ್ಷ ವಾಸಿಸಿದಿರಿ. ಓ ಮೂಸಾ! ನಂತರ ನನ್ನ ನಿರ್ಣಯದಂತೆ ನೀವು ಇಲ್ಲಿಗೆ ಬಂದಿದ್ದೀರಿ.

إِذۡ تَمۡشِيٓ أُخۡتُكَ فَتَقُولُ هَلۡ أَدُلُّكُمۡ عَلَىٰ مَن
يَكۡفُلُهُۥۖ فَرَجَعۡنَٰكَ إِلَىٰٓ أُمِّكَ كَيۡ تَقَرَّ عَيۡنُهَا
وَلَا تَحۡزَنَۚ وَقَتَلۡتَ نَفۡسٗا فَنَجَّيۡنَٰكَ مِنَ ٱلۡغَمِّ
وَفَتَنَّٰكَ فُتُونٗاۚ فَلَبِثۡتَ سِنِينَ فِيٓ أَهۡلِ مَدۡيَنَ
ثُمَّ جِئۡتَ عَلَىٰ قَدَرٖ يَٰمُوسَىٰ ٤٠

41. ನಾನು ನಿಮ್ಮನ್ನು ಸ್ವತಃ ನನಗಾಗಿ ಆಯ್ಕೆ ಮಾಡಿದ್ದೇನೆ.

وَٱصۡطَنَعۡتُكَ لِنَفۡسِي ٤١

42. ನೀವು ನಿಮ್ಮ ಸಹೋದರನನ್ನು ಕರೆದುಕೊಂಡು ನನ್ನ ದೃಷ್ಟಾಂತಗಳೊಂದಿಗೆ ಹೊರಡಿರಿ. ನನ್ನನ್ನು ಸ್ಮರಿಸುವ ವಿಷಯದಲ್ಲಿ ಉದಾಸೀನರಾಗಬೇಡಿ.

ٱذۡهَبۡ أَنتَ وَأَخُوكَ بِـَٔايَٰتِي وَلَا تَنِيَا
فِي ذِكۡرِي ٤٢

43. ನೀವಿಬ್ಬರೂ ಫರೋಹನ ಬಳಿಗೆ ಹೋಗಿರಿ. ಖಂಡಿತವಾಗಿಯೂ ಅವನು ಅತಿರೇಕಿಯಾಗಿದ್ದಾನೆ.

ٱذۡهَبَآ إِلَىٰ فِرۡعَوۡنَ إِنَّهُۥ طَغَىٰ ٤٣

44. ಅವನೊಡನೆ ಮೃದುವಾಗಿ ಮಾತನಾಡಿರಿ. ಅವನು ಉಪದೇಶ ಸ್ವೀಕರಿಸಬಹುದು ಅಥವಾ ಭಯಪಡಬಹುದು."

فَقُولَا لَهُۥ قَوۡلٗا لَّيِّنٗا لَّعَلَّهُۥ يَتَذَكَّرُ
أَوۡ يَخۡشَىٰ ٤٤

45. ಅವರಿಬ್ಬರು ಹೇಳಿದರು: "ನಮ್ಮ ಪರಿಪಾಲಕನೇ! ಅವನು ನಮ್ಮ ಮೇಲೆ ದಬ್ಬಾಳಿಕೆ ಮಾಡಬಹುದು ಅಥವಾ ಅತಿರೇಕವೆಸಬಹು-ದೆಂದು ನಮಗೆ ಭಯವಾಗುತ್ತಿದೆ."

قَالَا رَبَّنَآ إِنَّنَا نَخَافُ أَن يَفۡرُطَ عَلَيۡنَآ أَوۡ أَن
يَطۡغَىٰ ٤٥

46. ಅಲ್ಲಾಹು ಹೇಳಿದನು: "ಹೆದರಬೇಡಿ. ನಾನು ಖಂಡಿತ ನಿಮ್ಮ ಜೊತೆಗಿದ್ದೇನೆ. ನಾನು ಕೇಳುತ್ತಲೂ, ನೋಡುತ್ತಲೂ ಇದ್ದೇನೆ.

قَالَ لَا تَخَافَآۖ إِنَّنِي مَعَكُمَآ أَسۡمَعُ وَأَرَىٰ ٤٦

| | |
|---|---|
| 47. ನೀವಿಬ್ಬರೂ ಅವನ ಬಳಿಗೆ ಹೋಗಿ, ಅವನೊಡನೆ ಹೇಳಿರಿ: "ನಿಶ್ಚಯವಾಗಿಯೂ ನಾವು ನಿಮ್ಮ ಪರಿಪಾಲಕನ (ಅಲ್ಲಾಹನ) ಸಂದೇಶವಾಹಕರಾಗಿದ್ದೇವೆ. ಆದ್ದರಿಂದ ಇಸ್ರಾಯೇಲ್ ಮಕ್ಕಳನ್ನು ನಮ್ಮ ಜೊತೆಗೆ ಕಳುಹಿಸಿಕೊಡಿ. ಅವರನ್ನು ಹಿಂಸೆ ನೀಡಬೇಡಿ. ನಾವು ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯಿಂದ ಒಂದು ದೃಷ್ಟಾಂತದೊಂದಿಗೆ ನಿಮ್ಮ ಬಳಿಗೆ ಬಂದಿದ್ದೇವೆ. ಸನ್ಮಾರ್ಗವನ್ನು ಅನುಸರಿಸುವವರ ಮೇಲೆ (ಅಲ್ಲಾಹನ) ಸಂರಕ್ಷಣೆಯಿದೆ. | فَأۡتِيَاهُ فَقُولَآ إِنَّا رَسُولَا رَبِّكَ فَأَرۡسِلۡ مَعَنَا بَنِيٓ إِسۡرَٰٓءِيلَ وَلَا تُعَذِّبۡهُمۡۖ قَدۡ جِئۡنَٰكَ بِـَٔايَةٖ مِّن رَّبِّكَۖ وَٱلسَّلَٰمُ عَلَىٰ مَنِ ٱتَّبَعَ ٱلۡهُدَىٰٓ ٤٧ |
| 48. ಸತ್ಯವನ್ನು ನಿಷೇಧಿಸಿದವರಿಗೆ ಮತ್ತು (ಅದರಿಂದ) ವಿಮುಖರಾದವರಿಗೆ ಶಿಕ್ಷೆಯಿದೆಯೆಂದು ನಿಶ್ಚಯವಾಗಿಯೂ ನಮಗೆ ದೇವವಾಣಿ ನೀಡಲಾಗಿದೆ." | إِنَّا قَدۡ أُوحِيَ إِلَيۡنَآ أَنَّ ٱلۡعَذَابَ عَلَىٰ مَن كَذَّبَ وَتَوَلَّىٰ ٤٨ |
| 49. ಫರೋಹ ಕೇಳಿದನು: "ಓ ಮೂಸಾ! ನಿಮ್ಮಿಬ್ಬರ ಪರಿಪಾಲಕ ಯಾರು?" | قَالَ فَمَن رَّبُّكُمَا يَٰمُوسَىٰ ٤٩ |
| 50. ಮೂಸಾ ಹೇಳಿದರು: "ಪ್ರತಿಯೊಂದು ವಸ್ತುವಿಗೂ ಅದರ ವಿಶಿಷ್ಟ ರೂಪ ಮತ್ತು ಆಕೃತಿಯನ್ನು ನೀಡಿ ನಂತರ ಅದಕ್ಕೆ ಮಾರ್ಗದರ್ಶನ ಮಾಡಿದವನೇ ನಮ್ಮ ಪರಿಪಾಲಕ." | قَالَ رَبُّنَا ٱلَّذِيٓ أَعۡطَىٰ كُلَّ شَيۡءٍ خَلۡقَهُۥ ثُمَّ هَدَىٰ ٥٠ |
| 51. ಫರೋಹ ಕೇಳಿದನು: "ಸರಿ. ಹಾಗಾದರೆ ಹಿಂದಿನ ತಲೆಮಾರುಗಳ ಅವಸ್ಥೆಯೇನು?" | قَالَ فَمَا بَالُ ٱلۡقُرُونِ ٱلۡأُولَىٰ ٥١ |
| 52. ಮೂಸಾ ಹೇಳಿದರು: "ಅವರ ಕುರಿತಾದ ಜ್ಞಾನವು ನನ್ನ ಪರಿಪಾಲಕನ (ಅಲ್ಲಾಹನ) ಬಳಿ ಒಂದು ಗ್ರಂಥದಲ್ಲಿದೆ. ನನ್ನ ಪರಿಪಾಲಕನು (ಅಲ್ಲಾಹು) ಯಾವುದೇ ಪ್ರಮಾದವೆಸಗುವುದಿಲ್ಲ; ಅವನು ಮರೆಯುವುದೂ ಇಲ್ಲ." | قَالَ عِلۡمُهَا عِندَ رَبِّي فِي كِتَٰبٖۖ لَّا يَضِلُّ رَبِّي وَلَا يَنسَى ٥٢ |
| 53. ಅವನು ಯಾರೆಂದರೆ, ನಿಮಗೆ ಭೂಮಿಯನ್ನು ಹಾಸಿನಂತೆ ಮಾಡಿಕೊಟ್ಟವನು, ಅದರಲ್ಲಿ ನಿಮಗೆ ನಡೆಯಲು ದಾರಿಗಳನ್ನು ತೆರೆದುಕೊಟ್ಟವನು ಮತ್ತು ಆಕಾಶದಿಂದ ಮಳೆಯನ್ನು ಇಳಿಸಿಕೊಟ್ಟವನು. ನಂತರ ಆ ನೀರಿನಿಂದ ನಾವು ವಿವಿಧ ತರಹದ ಸಸ್ಯಗಳು ಬೆಳೆಯುವಂತೆ ಮಾಡುತ್ತೇವೆ. | ٱلَّذِي جَعَلَ لَكُمُ ٱلۡأَرۡضَ مَهۡدٗا وَسَلَكَ لَكُمۡ فِيهَا سُبُلٗا وَأَنزَلَ مِنَ ٱلسَّمَآءِ مَآءٗ فَأَخۡرَجۡنَا بِهِۦٓ أَزۡوَٰجٗا مِّن نَّبَاتٖ شَتَّىٰ ٥٣ |
| 54. ನೀವು ತಿನ್ನಿರಿ ಮತ್ತು ನಿಮ್ಮ ಜಾನುವಾರುಗಳನ್ನೂ ಮೇಯಿಸಿರಿ. ನಿಶ್ಚಯವಾಗಿಯೂ ಬುದ್ಧಿವಂತರಿಗೆ ಅದರಲ್ಲಿ ಅನೇಕ ದೃಷ್ಟಾಂತಗಳಿವೆ. | كُلُواْ وَٱرۡعَوۡاْ أَنۡعَٰمَكُمۡۚ إِنَّ فِي ذَٰلِكَ لَأٓيَٰتٖ لِّأُوْلِي ٱلنُّهَىٰ ٥٤ |
| 55. ನಾವು ನಿಮ್ಮನ್ನು ಅದರಿಂದ (ಭೂಮಿಯಿಂದ) ಸೃಷ್ಟಿಸಿದೆವು, ನಿಮ್ಮನ್ನು ಅದಕ್ಕೇ ಮರಳಿಸುವೆವು ಮತ್ತು ಅದರಿಂದಲೇ ನಿಮ್ಮನ್ನು | ۞مِنۡهَا خَلَقۡنَٰكُمۡ وَفِيهَا نُعِيدُكُمۡ وَمِنۡهَا نُخۡرِجُكُمۡ تَارَةً أُخۡرَىٰ ٥٥ |

ಪುನಃ ಹೊರತರುವೆವು.

56. ನಾವು ಅವನಿಗೆ (ಫರೋಹನಿಗೆ) ನಮ್ಮ ಎಲ್ಲಾ ದೃಷ್ಟಾಂತಗಳನ್ನು ತೋರಿಸಿಕೊಟ್ಟೆವು. ಆದರೆ ಅವನು ನಿಷೇಧಿಸಿದನು ಮತ್ತು ನಿರಾಕರಿಸಿದನು.

وَلَقَدْ أَرَيْنَٰهُ ءَايَٰتِنَا كُلَّهَا فَكَذَّبَ وَأَبَىٰ ٥٦

57. ಅವನು ಕೇಳಿದನು: "ಓ ಮೂಸಾ! ನೀನು ನಿನ್ನ ಮಾಟಗಾರಿಕೆಯನ್ನು ಬಳಸಿ ನಮ್ಮನ್ನು ನಮ್ಮ ದೇಶದಿಂದ ಓಡಿಸಲು ಇಲ್ಲಿಗೆ ಬಂದಿದ್ದೀಯಾ?

قَالَ أَجِئْتَنَا لِتُخْرِجَنَا مِنْ أَرْضِنَا بِسِحْرِكَ يَٰمُوسَىٰ ٥٧

58. ನಾವು ಕೂಡ ಅದಕ್ಕೆ ಸಮಾನವಾದ ಮಾಟಗಾರಿಕೆಯನ್ನು ತರುವೆವು. ಆದ್ದರಿಂದ ನಮ್ಮಿಬ್ಬರ ನಡುವೆ ಒಂದು ಸಮಯವನ್ನು ನಿಶ್ಚಯಿಸು. ಅದನ್ನು ನಮ್ಮಿಬ್ಬರಲ್ಲಿ ಯಾರೂ ಉಲ್ಲಂಘಿಸಬಾರದು. ಖಾಲಿ ಮೈದಾನದಲ್ಲಿ ಸ್ಪರ್ಧೆ ನಡೆಯಲಿ."

فَلَنَأْتِيَنَّكَ بِسِحْرٍ مِّثْلِهِۦ فَٱجْعَلْ بَيْنَنَا وَبَيْنَكَ مَوْعِدًا لَّا نُخْلِفُهُۥ نَحْنُ وَلَآ أَنتَ مَكَانًا سُوًى ٥٨

59. ಮೂಸಾ ಹೇಳಿದರು: "ಉತ್ಸವದ ದಿನವೇ ನಿಮಗಿರುವ ನಿಗದಿತ ಸಮಯವಾಗಿದೆ. ಪೂರ್ವಾಹ್ನದಲ್ಲೇ ಜನರು ಒಟ್ಟುಗೂಡಲಿ."

قَالَ مَوْعِدُكُمْ يَوْمُ ٱلزِّينَةِ وَأَن يُحْشَرَ ٱلنَّاسُ ضُحًى ٥٩

60. ಫರೋಹ ಅಲ್ಲಿಂದ ನಿರ್ಗಮಿಸಿ ತನ್ನ ವ್ಯೂಹವನ್ನು ನಿರ್ಧರಿಸಿದನು. ನಂತರ ನಿಗದಿತ ಸಮಯಕ್ಕೆ ಬಂದನು.

فَتَوَلَّىٰ فِرْعَوْنُ فَجَمَعَ كَيْدَهُۥ ثُمَّ أَتَىٰ ٦٠

61. ಮೂಸಾ ಮಾಟಗಾರರೊಡನೆ ಹೇಳಿದರು: "ನಿಮಗೆ ದುರದೃಷ್ಟ ಕಾದಿದೆ! ಅಲ್ಲಾಹನ ಮೇಲೆ ಸುಳ್ಳನ್ನು ಆರೋಪಿಸಬೇಡಿ. ಹಾಗೇನಾದರೂ ಮಾಡಿದರೆ ಅವನು ನಿಮ್ಮನ್ನು ಶಿಕ್ಷೆಯ ಮೂಲಕ ಸರ್ವನಾಶ ಮಾಡುವನು. ಸುಳ್ಳನ್ನು ಆರೋಪಿಸುವವನು ಖಂಡಿತ ಪರಾಜಿತನಾಗುತ್ತಾನೆ."

قَالَ لَهُم مُّوسَىٰ وَيْلَكُمْ لَا تَفْتَرُوا۟ عَلَى ٱللَّهِ كَذِبًا فَيُسْحِتَكُم بِعَذَابٍ ۖ وَقَدْ خَابَ مَنِ ٱفْتَرَىٰ ٦١

62. ಜನರು ಪರಸ್ಪರ ತಮ್ಮ ತಮ್ಮಲ್ಲಿ ಭಿನ್ನ ಅಭಿಪ್ರಾಯಗಳನ್ನು ತಳೆದರು. ಅವರು ರಹಸ್ಯವಾಗಿ ಮಾತನಾಡತೊಡಗಿದರು.

فَتَنَٰزَعُوٓا۟ أَمْرَهُم بَيْنَهُمْ وَأَسَرُّوا۟ ٱلنَّجْوَىٰ ٦٢

63. ಅವರು ಹೇಳಿದರು: "ನಿಶ್ಚಯವಾಗಿಯೂ ಇವರಿಬ್ಬರು ಮಾಟಗಾ-ರರಾಗಿದ್ದಾರೆ. ಇವರು ಇವರ ಮಾಟಗಾರಿಕೆಯಿಂದ ನಿಮ್ಮನ್ನು ಈ ದೇಶದಿಂದ ಓಡಿಸಲು ಮತ್ತು ನಿಮ್ಮ ಮಾದರಿಯೋಗ್ಯ ಸಂಪ್ರದಾಯವನ್ನು ನಾಶ ಮಾಡಲು ಬಯಸುತ್ತಾರೆ.

قَالُوٓا۟ إِنْ هَٰذَٰنِ لَسَٰحِرَٰنِ يُرِيدَانِ أَن يُخْرِجَاكُم مِّنْ أَرْضِكُم بِسِحْرِهِمَا وَيَذْهَبَا بِطَرِيقَتِكُمُ ٱلْمُثْلَىٰ ٦٣

64. ಆದ್ದರಿಂದ ನೀವು ನಿಮ್ಮ ತಂತ್ರದ ಬಗ್ಗೆ ದೃಢನಿರ್ಧಾರ ಮಾಡಿರಿ. ನಂತರ ಒಂದೇ ಸಾಲಿನಲ್ಲಿ ಬನ್ನಿರಿ. ಮೇಲುಗೈ ಸಾಧಿಸುವವರೇ ಇಂದು ಯಶಸ್ವಿಯಾಗುವರು."

فَأَجْمِعُوا۟ كَيْدَكُمْ ثُمَّ ٱئْتُوا۟ صَفًّا ۚ وَقَدْ أَفْلَحَ ٱلْيَوْمَ مَنِ ٱسْتَعْلَىٰ ٦٤

65. ಮಾಟಗಾರರು ಹೇಳಿದರು: "ಓ ಮೂಸಾ! ಒಂದೋ ನೀವು

قَالُوا۟ يَٰمُوسَىٰٓ إِمَّآ أَن تُلْقِىَ وَإِمَّآ أَن نَّكُونَ

ಎಸೆಯಿರಿ ಅಥವಾ ನಾವೇ ಮೊದಲು ಎಸೆಯುವೆವು."

أَوَّلَ مَنْ أَلْقَىٰ ٦٥

---

66. ಮೂಸಾ ಹೇಳಿದರು: "ಬೇಡ, ನೀವೇ ಎಸೆಯಿರಿ." ಆಗ ಅಗೋ! ಅವರ ಮಾಟಗಾರಿಕೆಯಿಂದ ಅವರ ಹಗ್ಗಗಳು ಮತ್ತು ಕೋಲುಗಳು ಚಲಿಸುತ್ತಿರುವಂತೆ ಕಾಣತೊಡಗಿದವು.

قَالَ بَلْ أَلْقُوا۟ ۖ فَإِذَا حِبَالُهُمْ وَعِصِيُّهُمْ يُخَيَّلُ إِلَيْهِ
مِن سِحْرِهِمْ أَنَّهَا تَسْعَىٰ ٦٦

---

67. ಮೂಸಾರಿಗೆ ಮನಸ್ಸಿನಲ್ಲಿ ಭಯವಾಯಿತು.

فَأَوْجَسَ فِى نَفْسِهِۦ خِيفَةً مُّوسَىٰ ٦٧

---

68. ನಾವು ಹೇಳಿದೆವು: "ಭಯಪಡಬೇಡಿ. ನಿಶ್ಚಯವಾಗಿಯೂ ನೀವೇ ಮೇಲುಗೈ ಸಾಧಿಸುವಿರಿ.

قُلْنَا لَا تَخَفْ إِنَّكَ أَنتَ ٱلْأَعْلَىٰ ٦٨

---

69. ನಿಮ್ಮ ಬಲಗೈಯ್ಯಲ್ಲಿರುವುದನ್ನು (ಕೋಲನ್ನು) ಎಸೆಯಿರಿ. ಅವರು ನಿರ್ಮಿಸಿದ ಎಲ್ಲವನ್ನೂ ಅದು ನುಂಗಿ ಬಿಡುವುದು. ಅವರು ಮಾಡಿರುವುದು ಮಾಟಗಾರರು ಮಾಡುವ ಕಣ್ಕಟ್ಟು ವಿದ್ಯೆಯಾಗಿದೆ. ಮಾಟಗಾರರು ಎಲ್ಲೇ ಹೋದರೂ ಯಶಸ್ವಿಯಾಗುವುದಿಲ್ಲ."

وَأَلْقِ مَا فِى يَمِينِكَ تَلْقَفْ مَا صَنَعُوٓا۟ ۖ إِنَّمَا
صَنَعُوا۟ كَيْدُ سَـٰحِرٍ ۖ وَلَا يُفْلِحُ ٱلسَّاحِرُ حَيْثُ
أَتَىٰ ٦٩

---

70. ಆಗ ಮಾಟಗಾರರು ಸಾಷ್ಟಾಂಗವೆರಗುತ್ತಾ ಬಿದ್ದರು. ಅವರು ಹೇಳಿದರು: "ನಾವು ಹಾರೂನ್ ಮತ್ತು ಮೂಸಾರ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ವಿಶ್ವಾಸವಿಟ್ಟಿದ್ದೇವೆ."

فَأُلْقِىَ ٱلسَّحَرَةُ سُجَّدًا قَالُوٓا۟ ءَامَنَّا بِرَبِّ هَـٰرُونَ
وَمُوسَىٰ ٧٠

---

71. ಫರೋಹ ಹೇಳಿದನು: "ನಾನು ನಿಮಗೆ ಅಪ್ಪಣೆ ಕೊಡುವ ಮೊದಲೇ ನೀವು ಅವನಲ್ಲಿ ವಿಶ್ವಾಸವಿಟ್ಟಿರಾ? ನಿಶ್ಚಯವಾಗಿಯೂ ಅವನು ನಿಮಗೆ ಮಾಟಗಾರಿಕೆಯನ್ನು ಕಲಿಸಿಕೊಟ್ಟ ನಿಮ್ಮ ಮುಖಂಡನಾಗಿದ್ದಾನೆ. ಆದ್ದರಿಂದ ಖಂಡಿತವಾಗಿಯೂ ನಾನು ನಿಮ್ಮ ಕೈ-ಕಾಲುಗಳನ್ನು ವಿರುದ್ಧ ದಿಕ್ಕಿನಿಂದ ಕತ್ತರಿಸಿ, ನಂತರ ನಿಮ್ಮೆಲ್ಲರನ್ನೂ ಖರ್ಜೂರ ಮರದ ಕಾಂಡದಲ್ಲಿ ಶಿಲುಬೆಗೆ ಹಾಕುವೆನು. ನಮ್ಮಿಬ್ಬರಲ್ಲಿ (ನಾನು ಮತ್ತು ಮೂಸಾರ ದೇವನು) ಅತಿಕಠೋರವಾಗಿ ಮತ್ತು ಶಾಶ್ವತವಾಗಿ ಉಳಿಯುವ ಶಿಕ್ಷೆಯನ್ನು ನೀಡುವುದು ಯಾರೆಂದು ನೀವು ಖಂಡಿತ ತಿಳಿಯುವಿರಿ."

قَالَ ءَامَنتُمْ لَهُۥ قَبْلَ أَنْ ءَاذَنَ لَكُمْ ۖ
إِنَّهُۥ لَكَبِيرُكُمُ ٱلَّذِى عَلَّمَكُمُ ٱلسِّحْرَ ۖ
فَلَأُقَطِّعَنَّ أَيْدِيَكُمْ وَأَرْجُلَكُم مِّنْ خِلَـٰفٍ
وَلَأُصَلِّبَنَّكُمْ فِى جُذُوعِ ٱلنَّخْلِ وَلَتَعْلَمُنَّ
أَيُّنَآ أَشَدُّ عَذَابًا وَأَبْقَىٰ ٧١

---

72. ಮಾಟಗಾರರು ಹೇಳಿದರು: "ನಮ್ಮ ಬಳಿಗೆ ಬಂದ ಈ ಸ್ಪಷ್ಟ ಸಾಕ್ಷ್ಯಾಧಾರಗಳಿಗಿಂತ ಮತ್ತು ನಮ್ಮನ್ನು ಸೃಷ್ಟಿಸಿದ ಅಲ್ಲಾಹನಿಗಿಂತ ನಾವು ನಿಮ್ಮ ಮಾತಿಗೆ ಹೆಚ್ಚು ಪ್ರಾಶಸ್ತ್ಯ ನೀಡುವುದಿಲ್ಲ. ಆದ್ದರಿಂದ ನಿಮಗೆ ಏನು ತೀರ್ಪು ನೀಡಲಿದೆಯೋ ನೀಡಿ. ನಿಮಗೆ ತೀರ್ಪು ನೀಡಲು ಸಾಧ್ಯವಾಗುವುದು ಇಹಲೋಕದಲ್ಲಿ ಮಾತ್ರ.

قَالُوا۟ لَن نُّؤْثِرَكَ عَلَىٰ مَا جَآءَنَا مِنَ ٱلْبَيِّنَـٰتِ
وَٱلَّذِى فَطَرَنَا ۖ فَٱقْضِ مَآ أَنتَ قَاضٍ ۖ إِنَّمَا
تَقْضِى هَـٰذِهِ ٱلْحَيَوٰةَ ٱلدُّنْيَآ ٧٢

---

73. ನಾವು ನಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ವಿಶ್ವಾಸವಿಟ್ಟಿದ್ದೇವೆ.

إِنَّآ ءَامَنَّا بِرَبِّنَا لِيَغْفِرَ لَنَا خَطَـٰيَـٰنَا وَمَآ

أَكۡرَهۡتَنَا عَلَيۡهِ مِنَ ٱلسِّحۡرِۗ وَٱللَّهُ خَيۡرٞ وَأَبۡقَىٰٓ ٧٣

ನಾವು ಮಾಡಿದ ಪಾಪಗಳನ್ನು ಮತ್ತು ನೀವು ನಮ್ಮಿಂದ ಬಲವಂತವಾಗಿ ಮಾಡಿಸಿದ ಮಾಟಗಾರಿಕೆಯನ್ನು ಅವನು ನಮಗೆ ಕ್ಷಮಿಸುವನೆಂಬ ಭರವಸೆಯಿದೆ. ಅಲ್ಲಾಹು ಅತಿಶ್ರೇಷ್ಠನು ಮತ್ತು ಚಿರಂತನನಾಗಿದ್ದಾನೆ."

---

إِنَّهُۥ مَن يَأۡتِ رَبَّهُۥ مُجۡرِمٗا فَإِنَّ لَهُۥ جَهَنَّمَ لَا يَمُوتُ فِيهَا وَلَا يَحۡيَىٰ ٧٤

74. ಯಾರು ತನ್ನ ಪರಿಪಾಲಕನ (ಅಲ್ಲಾಹನ) ಬಳಿಗೆ ಅಪರಾಧಿಯಾಗಿ ಬರುತ್ತಾನೋ—ಅವನಿಗೆ ನರಕಾಗ್ನಿಯಾಗಿದೆ. ಅವನು ಅದರಲ್ಲಿ ಸಾಯುವುದೂ ಇಲ್ಲ, ಬದುಕುವುದೂ ಇಲ್ಲ.

---

وَمَن يَأۡتِهِۦ مُؤۡمِنٗا قَدۡ عَمِلَ ٱلصَّٰلِحَٰتِ فَأُوْلَٰٓئِكَ لَهُمُ ٱلدَّرَجَٰتُ ٱلۡعُلَىٰ ٧٥

75. ಯಾರು ಅವನ ಬಳಿಗೆ ಸತ್ಯವಿಶ್ವಾಸಿಯಾಗಿ ಮತ್ತು ಸತ್ಕರ್ಮಿಯಾಗಿ ಬರುತ್ತಾನೋ ಅವರಿಗೆ ಉನ್ನತೋನ್ನತ ಪದವಿಗಳಿವೆ.

---

جَنَّٰتُ عَدۡنٖ تَجۡرِي مِن تَحۡتِهَا ٱلۡأَنۡهَٰرُ خَٰلِدِينَ فِيهَاۚ وَذَٰلِكَ جَزَآءُ مَن تَزَكَّىٰ ٧٦

76. ತಳಭಾಗದಿಂದ ನದಿಗಳು ಹರಿಯುವ ಶಾಶ್ವತ ವಾಸದ ಸ್ವರ್ಗೋದ್ಯಾನಗಳು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅದು ಪರಿಶುದ್ಧರಾದವರಿಗೆ ನೀಡಲಾಗುವ ಪ್ರತಿಫಲವಾಗಿದೆ.

---

وَلَقَدۡ أَوۡحَيۡنَآ إِلَىٰ مُوسَىٰٓ أَنۡ أَسۡرِ بِعِبَادِي فَٱضۡرِبۡ لَهُمۡ طَرِيقٗا فِي ٱلۡبَحۡرِ يَبَسٗا لَّا تَخَٰفُ دَرَكٗا وَلَا تَخۡشَىٰ ٧٧

77. ನಾವು ಮೂಸಾರಿಗೆ ದೇವವಾಣಿಯನ್ನು ನೀಡಿದೆವು: "ನೀವು ರಾತ್ರೋರಾತ್ರಿ ನನ್ನ ದಾಸರೊಡನೆ ಹೊರಡಿ. ಅವರಿಗೆ ಸಮುದ್ರದಲ್ಲಿ ಒಂದು ಒಣ ರಸ್ತೆಯನ್ನು ಮಾಡಿಕೊಡಿ. ನಂತರ ನಿಮಗೆ (ಶತ್ರುಗಳು) ಹಿಂಬಾಲಿಸಿ ಹಿಡಿಯುವರೆಂಬ ಆತಂಕ ಮತ್ತು ಭಯವಿರಲಾರದು."

---

فَأَتۡبَعَهُمۡ فِرۡعَوۡنُ بِجُنُودِهِۦ فَغَشِيَهُم مِّنَ ٱلۡيَمِّ مَا غَشِيَهُمۡ ٧٨

78. ಫರೋಹ ತನ್ನ ಸೈನ್ಯದೊಂದಿಗೆ ಅವರನ್ನು ಹಿಂಬಾಲಿಸಿದನು. ಆಗ ಸಮುದ್ರವು ಹೇಗೆ ಆವರಿಸಿಕೊಳ್ಳಬೇಕೋ ಹಾಗೆಯೇ ಅವರನ್ನು ಆವರಿಸಿಕೊಂಡಿತು.

---

وَأَضَلَّ فِرۡعَوۡنُ قَوۡمَهُۥ وَمَا هَدَىٰ ٧٩

79. ಫರೋಹ ತನ್ನ ಜನರನ್ನು ತಪ್ಪುದಾರಿಗೆಳೆದನು. ಅವನು ಅವರಿಗೆ ಸರಿಯಾದ ಮಾರ್ಗವನ್ನು ತೋರಿಸಲಿಲ್ಲ.

---

يَٰبَنِيٓ إِسۡرَٰٓءِيلَ قَدۡ أَنجَيۡنَٰكُم مِّنۡ عَدُوِّكُمۡ وَوَٰعَدۡنَٰكُمۡ جَانِبَ ٱلطُّورِ ٱلۡأَيۡمَنَ وَنَزَّلۡنَا عَلَيۡكُمُ ٱلۡمَنَّ وَٱلسَّلۡوَىٰ ٨٠

80. ಓ ಇಸ್ರಾಯೇಲ್ ಮಕ್ಕಳೇ! ನಾವು ನಿಮ್ಮನ್ನು ನಿಮ್ಮ ವೈರಿಯಿಂದ ರಕ್ಷಿಸಿದೆವು. ತೂರ್ ಪರ್ವತದ ಬಲಭಾಗವನ್ನು ನಾವು ನಿಮಗೆ ವಾಗ್ದಾನ ಮಾಡಿದೆವು. ಮನ್ನ ಮತ್ತು ಸಲ್ವಾವನ್ನು ನಿಮಗೆ ಇಳಿಸಿಕೊಟ್ಟೆವು.

---

كُلُواْ مِن طَيِّبَٰتِ مَا رَزَقۡنَٰكُمۡ وَلَا تَطۡغَوۡاْ فِيهِ فَيَحِلَّ عَلَيۡكُمۡ غَضَبِيۖ وَمَن يَحۡلِلۡ عَلَيۡهِ غَضَبِي فَقَدۡ هَوَىٰ ٨١

81. ನಾವು ನಿಮಗೆ ಒದಗಿಸಿದ ಶುದ್ಧ ವಸ್ತುಗಳನ್ನು ತಿನ್ನಿರಿ. ಅದರಲ್ಲಿ ಮಿತಿಮೀರಬೇಡಿ. ಹಾಗೇನಾದರೂ ಆದರೆ ನನ್ನ ಕೋಪವು ನಿಮ್ಮ ಮೇಲೆರಗುವುದು. ಯಾರ ಮೇಲೆ ನನ್ನ ಕೋಪವು ಎರಗುತ್ತದೋ ಅವನು ಸಂಪೂರ್ಣ ನಾಶವಾದನು.

82. ಪಶ್ಚಾತ್ತಾಪಪಡುವವರು, ವಿಶ್ವಾಸವಿಡುವವರು ಮತ್ತು ಸತ್ಕರ್ಮವೆಸಗುವವರು ಹಾಗೂ ಅನಂತರ ಸನ್ಮಾರ್ಗದಲ್ಲಿ ಸ್ಥಿರವಾಗಿ ನಿಲ್ಲುವವರಿಗೆ ನಿಶ್ಚಯವಾಗಿಯೂ ನಾನು ಕ್ಷಮಿಸುವೆನು.

وَإِنِّي لَغَفَّارٞ لِّمَن تَابَ وَءَامَنَ وَعَمِلَ صَٰلِحٗا ثُمَّ ٱهۡتَدَىٰ ﴿٨٢﴾

83. "ಓ ಮೂಸಾ! ನೀವು ನಿಮ್ಮ ಜನರನ್ನು ಬಿಟ್ಟು ತರಾತುರಿಯಿಂದ ಬರಲು ಕಾರಣವೇನು?"

وَمَآ أَعۡجَلَكَ عَن قَوۡمِكَ يَٰمُوسَىٰ ﴿٨٣﴾

84. ಮೂಸಾ ಹೇಳಿದರು: "ಅವರು ನನ್ನ ಹಿಂದೆಯೇ ಇದ್ದಾರೆ. ನನ್ನ ಪರಿಪಾಲಕನೇ! ನೀನು ಪ್ರೀತಿಗೆ ಪಾತ್ರನಾಗಲು ನಾನು ತರಾತುರಿಯಿಂದ ನಿನ್ನ ಬಳಿಗೆ ಬಂದಿದ್ದೇನೆ."[1]

قَالَ هُمۡ أُوْلَآءِ عَلَىٰٓ أَثَرِي وَعَجِلۡتُ إِلَيۡكَ رَبِّ لِتَرۡضَىٰ ﴿٨٤﴾

85. ಅಲ್ಲಾಹು ಹೇಳಿದನು: "ನೀವು ನಿಮ್ಮ ಜನರನ್ನು ಬಿಟ್ಟು ಬಂದ ಬಳಿಕ ನಾವು ಅವರನ್ನು ಪರೀಕ್ಷಿಸಿದೆವು. ಸಾಮಿರಿ ಅವರನ್ನು ದಾರಿತಪ್ಪಿಸಿದನು."[2]

قَالَ فَإِنَّا قَدۡ فَتَنَّا قَوۡمَكَ مِنۢ بَعۡدِكَ وَأَضَلَّهُمُ ٱلسَّامِرِيُّ ﴿٨٥﴾

86. ಆಗ ಮೂಸಾ ತಮ್ಮ ಜನರ ಬಳಿಗೆ ಕೋಪ ಮತ್ತು ಬೇಸರದಿಂದ ಹಿಂದಿರುಗಿದರು. ಅವರು ಹೇಳಿದರು: "ಓ ನನ್ನ ಜನರೇ! ನಿಮ್ಮ ಪರಿಪಾಲಕನು (ಅಲ್ಲಾಹು) ನಿಮಗೆ ಅತ್ಯುತ್ತಮವಾದ ಆಶ್ವಾಸನೆಯನ್ನು ನೀಡಿಲ್ಲವೇ? ಅದು ಈಡೇರುವ ಸಮಯವು ನಿಮಗೆ ದೀರ್ಘವಾಗಿ ಕಂಡಿತೇ? ಅಥವಾ ನಿಮ್ಮ ಪರಿಪಾಲಕನ (ಅಲ್ಲಾಹನ) ಕೋಪವು ನಿಮ್ಮ ಮೇಲೆ ಇಳಿಯಬೇಕೆಂದು ನೀವು ಬಯಸಿದಿರೋ? ಅದಕ್ಕಾಗಿ ನೀವು ನನ್ನ ಕರಾರನ್ನು ಮುರಿದಿರೋ?"

فَرَجَعَ مُوسَىٰٓ إِلَىٰ قَوۡمِهِۦ غَضۡبَٰنَ أَسِفٗاۚ قَالَ يَٰقَوۡمِ أَلَمۡ يَعِدۡكُمۡ رَبُّكُمۡ وَعۡدًا حَسَنًاۚ أَفَطَالَ عَلَيۡكُمُ ٱلۡعَهۡدُ أَمۡ أَرَدتُّمۡ أَن يَحِلَّ عَلَيۡكُمۡ غَضَبٞ مِّن رَّبِّكُمۡ فَأَخۡلَفۡتُم مَّوۡعِدِي ﴿٨٦﴾

87. ಅವರು ಹೇಳಿದರು: "ನಾವು ನಮ್ಮ ಇಚ್ಛೆಯಂತೆ ನಿಮ್ಮ ಕರಾರನ್ನು ಮುರಿದಿಲ್ಲ. ಬದಲಿಗೆ, ನಮ್ಮ ಮೇಲೆ ಆ ಜನರ (ಫರೋಹನ ಜನರ) ಆಭರಣಗಳ ಹೊರೆಗಳನ್ನು ಹೊರಿಸಲಾಗಿತ್ತು. ನಾವು ಅದನ್ನು ಕೆಳಗೆ ಎಸೆದೆವು. ಸಾಮಿರಿ ಕೂಡ ಅದೇ ರೀತಿ ಎಸೆದನು.

قَالُواْ مَآ أَخۡلَفۡنَا مَوۡعِدَكَ بِمَلۡكِنَا وَلَٰكِنَّا حُمِّلۡنَآ أَوۡزَارٗا مِّن زِينَةِ ٱلۡقَوۡمِ فَقَذَفۡنَٰهَا فَكَذَٰلِكَ أَلۡقَى ٱلسَّامِرِيُّ ﴿٨٧﴾

88. ನಂತರ ಅವನು ಧ್ವನಿ ಹೊರಡಿಸುವ ಒಂದು ಕರುವಿನ

فَأَخۡرَجَ لَهُمۡ عِجۡلٗا جَسَدٗا لَّهُۥ خُوَارٞ فَقَالُواْ

[1] ಮೂಸಾ (ಅವರ ಮೇಲೆ ಶಾಂತಿಯಿರಲಿ) ಇಸ್ರಾಯೇಲ್ ಮಕ್ಕಳನ್ನು ಸಮುದ್ರ ದಾಟಿಸಿ ತೂರ್ ಪರ್ವತದ ಕಡೆಗೆ ಕರೆದೊಯ್ದರು. ಅವರು ಅಲ್ಲಾಹನನ್ನು ಭೇಟಿಯಾಗಿ ಅವನ ಪ್ರೀತಿ ಪಡೆಯಬೇಕೆಂಬ ಅತೀವ ಹಂಬಲದಿಂದ ಅನುಯಾಯಿಗಳನ್ನು ಹಿಂದೆ ಬಿಟ್ಟು ತರಾತುರಿಯಿಂದ ಪರ್ವತದ ಕಡೆಗೆ ಹೋದರು. ಅಲ್ಲಾಹು ಅದರ ಬಗ್ಗೆ ಕೇಳಿದಾಗ ಅವರು ನೀಡಿದ ಉತ್ತರವೇನೆಂದರೆ, "ನನಗೆ ನಿನ್ನ ಪ್ರೀತಿ ಪಡೆಯಬೇಕೆಂಬ ಅತೀವ ಹಂಬಲವಿದೆ, ಆದ್ದರಿಂದ ನಾನು ಬೇಗನೇ ಬಂದೆ. ನನ್ನ ಅನುಯಾಯಿಗಳು ನನ್ನ ಹಿಂದೆಯೇ ಬರುತ್ತಿದ್ದಾರೆ." ಕೆಲವು ವ್ಯಾಖ್ಯಾನಕಾರರು ಹೇಳುವಂತೆ, ಅವರು ಅನುಯಾಯಿಗಳನ್ನು ಪರ್ವತದ ತಪ್ಪಲಿನಲ್ಲಿ ಬಿಟ್ಟು ಬಂದಿದ್ದರು. ಅವರು ನೀಡಿದ ಉತ್ತರ ಹೀಗಿತ್ತು: "ನನ್ನ ಅನುಯಾಯಿಗಳು ನನ್ನ ಹಿಂದೆ ಪರ್ವತದ ತಪ್ಪಲಿನಲ್ಲಿದ್ದಾರೆ. ಅವರು ನಾನು ಹಿಂದಿರುಗಿ ಬರುವುದನ್ನು ನಿರೀಕ್ಷಿಸುತ್ತಾ ಕಾಯುತ್ತಿದ್ದಾರೆ."

[2] ಮೂಸಾ (ಅವರ ಮೇಲೆ ಶಾಂತಿಯಿರಲಿ) ಹೋದ ಬಳಿಕ ಸಾಮಿರಿ ಎಂಬ ಹೆಸರಿನ ವ್ಯಕ್ತಿ ಇಸ್ರಾಯೇಲ್ ಮಕ್ಕಳಿಗೆ ಒಂದು ಕರುವಿನ ರೂಪವನ್ನು ಮಾಡಿಕೊಟ್ಟು ಅದನ್ನು ಪೂಜಿಸುವಂತೆ ಹೇಳಿದನು. ಅವರು ಅದನ್ನು ಪೂಜಿಸಿದರು. ಈ ವಿಷಯವನ್ನು ಅಲ್ಲಾಹು ಮೂಸಾರಿಗೆ (ಅವರ ಮೇಲೆ ಶಾಂತಿಯಿರಲಿ) ತಿಳಿಸಿದನು.

ರೂಪವನ್ನು ಅದರಿಂದ ಹೊರತಂದನು. ಅವರು ಹೇಳಿದರು: "ಇದೇ ನಿಮ್ಮ ಮತ್ತು ಮೂಸಾರ ದೇವರು. ಮೂಸಾರಿಗೆ ಅದು ಮರೆತುಹೋಗಿದೆ."[1] | هَٰذَآ إِلَٰهُكُمۡ وَإِلَٰهُ مُوسَىٰ فَنَسِيَ ٨٨

89. ಆದರೆ ಅವರ ಮಾತಿಗೆ ಉತ್ತರ ನೀಡಲು ಮತ್ತು ಅವರಿಗೆ ಯಾವುದೇ ತೊಂದರೆ ಅಥವಾ ಉಪಕಾರ ಮಾಡಲು ಅದಕ್ಕೆ (ಆ ಕರುವಿನ ಮೂರ್ತಿಗೆ) ಸಾಧ್ಯವಿಲ್ಲವೆಂದು ಅವರು ಕಾಣುವುದಿಲ್ಲವೇ? | أَفَلَا يَرَوۡنَ أَلَّا يَرۡجِعُ إِلَيۡهِمۡ قَوۡلٗا وَلَا يَمۡلِكُ لَهُمۡ ضَرّٗا وَلَا نَفۡعٗا ٨٩

90. ಇದಕ್ಕಿಂತ ಮೊದಲು ಹಾರೂನ್ ಅವರೊಡನೆ ಹೇಳಿದ್ದರು: "ಓ ನನ್ನ ಜನರೇ! ಈ ಕರುವಿನ ಮೂಲಕ ನಿಮ್ಮನ್ನು ಪರೀಕ್ಷಿಸಲಾಗು-ತ್ತಿದೆ. ನಿಶ್ಚಯವಾಗಿಯೂ ಪರಮ ದಯಾಮಯನೇ (ಅಲ್ಲಾಹನೇ) ನಿಮ್ಮ ಪರಿಪಾಲಕ. ನೀವು ನನ್ನನ್ನು ಅನುಸರಿಸಿರಿ. ನನ್ನ ಮಾತನ್ನು ಕೇಳಿರಿ." | وَلَقَدۡ قَالَ لَهُمۡ هَٰرُونُ مِن قَبۡلُ يَٰقَوۡمِ إِنَّمَا فُتِنتُم بِهِۦۖ وَإِنَّ رَبَّكُمُ ٱلرَّحۡمَٰنُ فَٱتَّبِعُونِي وَأَطِيعُوٓاْ أَمۡرِي ٩٠

91. ಅವರು ಉತ್ತರಿಸಿದರು: "ಮೂಸಾ ನಮ್ಮ ಬಳಿಗೆ ಮರಳುವ ತನಕ ನಾವು ಇದರ ಮುಂದೆ ಧ್ಯಾನ ಮಾಡುತ್ತಲೇ ಇರುತ್ತೇವೆ." | قَالُواْ لَن نَّبۡرَحَ عَلَيۡهِ عَٰكِفِينَ حَتَّىٰ يَرۡجِعَ إِلَيۡنَا مُوسَىٰ ٩١

92. ಮೂಸಾ ಕೇಳಿದರು: "ಓ ಹಾರೂನ್! ಇವರು ದಾರಿತಪ್ಪುವುದನ್ನು ಕಂಡಾಗ ನಿಮ್ಮನ್ನು ತಡೆದದ್ದು ಏನು? | قَالَ يَٰهَٰرُونُ مَا مَنَعَكَ إِذۡ رَأَيۡتَهُمۡ ضَلُّوٓاْ ٩٢

93. ನನ್ನನ್ನು ಅನುಸರಿಸದಂತೆ. ನೀನು ನನ್ನ ಆದೇಶವನ್ನು ಉಲ್ಲಂಘಿಸಿದೆಯಾ?"[2] | أَلَّا تَتَّبِعَنِۖ أَفَعَصَيۡتَ أَمۡرِي ٩٣

94. ಹಾರೂನ್ ಹೇಳಿದರು: "ನನ್ನ ತಾಯಿಯ ಮಗನೇ! ನನ್ನ ಗಡ್ಡವನ್ನು ಅಥವಾ ನನ್ನ ತಲೆಯನ್ನು ಹಿಡಿಯಬೇಡ. ನೀನು ಇಸ್ರಾಯೇಲ್ ಮಕ್ಕಳ ನಡುವೆ ಭಿನ್ನಮತ ಎಬ್ಬಿಸಿರುವೆ. ನನ್ನ ಆಜ್ಞೆಯನ್ನು ಕೂಡ ನೀನು ಕಾಯಲಿಲ್ಲ ಎಂದು ನೀನು ಹೇಳಬಹುದೆಂದು ನನಗೆ ಭಯವಾಯಿತು."[3] | قَالَ يَبۡنَؤُمَّ لَا تَأۡخُذۡ بِلِحۡيَتِي وَلَا بِرَأۡسِيٓۖ إِنِّي خَشِيتُ أَن تَقُولَ فَرَّقۡتَ بَيۡنَ بَنِيٓ إِسۡرَٰٓءِيلَ وَلَمۡ تَرۡقُبۡ قَوۡلِي ٩٤

---

[1] ಇಸ್ರಾಯೇಲ್ ಮಕ್ಕಳು ಈಜಿಪ್ಟಿನಿಂದ ಬರುವಾಗ ಈಜಿಪ್ಟಿನ ಜನರಿಂದ ಅವರು ಸಾಲವಾಗಿ ಪಡೆದ ಆಭರಣಗಳನ್ನು ಕೂಡ ತಂದಿದ್ದರು. ಆದರೆ ಆ ಆಭರಣಗಳನ್ನು ಉಪಯೋಗಿಸುವುದು ನಿಷಿದ್ಧವಾಗಿದ್ದರಿಂದ ಅವರು ಅದನ್ನು ಬೆಂಕಿಗೆಸೆದರು. ಸಾಮಿರಿ ಕೂಡ ತನ್ನಲ್ಲಿರುವ ಆಭರಣಗಳನ್ನು ಎಸೆದನು. ನಂತರ ಅವನು ಅದರಿಂದ ಒಂದು ಕರುವಿನ ಮೂರ್ತಿಯನ್ನು ಮಾಡಿದನು. ಆ ಮೂರ್ತಿ ಹೇಗಿತ್ತೆಂದರೆ ಗಾಳಿ ಅದರೊಳಗೆ ಹೊಕ್ಕಾಗ ಅದರಿಂದ ಒಂದು ರೀತಿಯ ಧ್ವನಿ ಬರುತ್ತಿತ್ತು. ಸಾಮಿರಿ ಆ ಮೂರ್ತಿಯನ್ನು ಜನರಿಗೆ ತೋರಿಸಿ, "ಮೂಸಾ ಅಲ್ಲಾಹನನ್ನು ಭೇಟಿಯಾಗಲು ತೂರ್ ಪರ್ವತಕ್ಕೆ ಹೋಗಿದ್ದಾರೆ. ಆದರೆ ಅವರಿಗೆ ಮರೆತುಹೋಗಿದೆ. ವಾಸ್ತವವಾಗಿ ಅವರು ದೇವರು ಇಲ್ಲೇ ಇದ್ದಾನೆ" ಎನ್ನುತ್ತಾ ಅವರನ್ನು ದಾರಿತಪ್ಪಿಸಿದನು.

[2] ಅಂದರೆ ಅವರು ದಾರಿತಪ್ಪಿದ್ದನ್ನು ಕಂಡಾಗ ನೀನು ಅವರಿಗೆ ಬುದ್ಧಿವಾದ ಹೇಳಿದೆ. ಆದರೆ ಅವರು ಅದನ್ನು ಸ್ವೀಕರಿಸದೆ ಇದ್ದಾಗ ನೀನು ನೇರವಾಗಿ ನನ್ನ ಬಳಿಗೆ ತೂರ್ ಪರ್ವತಕ್ಕೆ ಬಂದು ನನಗೆ ವಿಷಯ ತಿಳಿಸಬೇಕಾಗಿತ್ತು. ನೀನು ಕೂಡ ನನ್ನ ಆದೇಶವನ್ನು ಉಲ್ಲಂಘಿಸಿರುವೆ. (ಅಂದರೆ ನೀನು ಸರಿಯಾದ ರೀತಿಯಲ್ಲಿ ನನ್ನ ಪ್ರತಿನಿಧಿಯಾಗಿರಲಿಲ್ಲ).

[3] ವಾಸ್ತವವಾಗಿ ಹಾರೂನ್ (ಅವರ ಮೇಲೆ ಶಾಂತಿಯಿರಲಿ) ತಮ್ಮ ಕರ್ತವ್ಯವನ್ನು ಸರಿಯಾದ ರೀತಿಯಲ್ಲಿ ನಿರ್ವಹಿಸಿದ್ದರು. ಅವರು

95. ಮೂಸಾ ಕೇಳಿದರು: “ಓ ಸಾಮಿರಿ! ನಿನ್ನ ಸಮಾಚಾರವೇನು?”

قَالَ فَمَا خَطۡبُكَ يَٰسَٰمِرِيُّ ٩٥

96. ಅವನು ಹೇಳಿದನು: “ಜನರಿಗೆ ಕಾಣಲು ಸಾಧ್ಯವಾಗದ ಒಂದನ್ನು ನಾನು ನೋಡಿದೆ. ನಾನು ಆ ದೇವದೂತನ ಹೆಜ್ಜೆ ಗುರುತಿನಿಂದ ಒಂದು ಹಿಡಿ ಮಣ್ಣು ತೆಗೆದು ಅದಕ್ಕೆ ಹಾಕಿದೆ. ಹೀಗೆ ಮಾಡಲು ನನ್ನ ಮನಸ್ಸು ನನ್ನನ್ನು ಪ್ರೇರೇಪಿಸಿತು.”[1]

قَالَ بَصُرۡتُ بِمَا لَمۡ يَبۡصُرُواْ بِهِۦ فَقَبَضۡتُ
قَبۡضَةٗ مِّنۡ أَثَرِ ٱلرَّسُولِ فَنَبَذۡتُهَا وَكَذَٰلِكَ
سَوَّلَتۡ لِي نَفۡسِي ٩٦

97. ಮೂಸಾ ಹೇಳಿದರು: “ಹೊರಟು ಹೋಗು! ನೀನು ನಿರಂತರ “ನನ್ನನ್ನು ಮುಟ್ಟಬೇಡಿ” ಎಂದು ಹೇಳುತ್ತಿರುವುದೇ ಇಹಲೋಕದಲ್ಲಿ ನಿನಗಿರುವ ಶಿಕ್ಷೆ.[2] ನಿನಗೆ ಒಂದು ನಿಶ್ಚಿತ ಅವಧಿಯಿದೆ. ಅದನ್ನು ಉಲ್ಲಂಘಿಸಲು ನಿನಗೆ ಸಾಧ್ಯವಿಲ್ಲ. ನೀನು ಧ್ಯಾನ ಮಾಡುತ್ತಿದ್ದ ನಿನ್ನ ದೇವರನ್ನು (ಕರುವನ್ನು) ನೋಡು. ನಾವು ಅದನ್ನು ಖಂಡಿತ ಸುಟ್ಟು ಬಿಡುವೆವು. ನಂತರ ಅದನ್ನು ನುಚ್ಚುನೂರು ಮಾಡಿ ಕಡಲಿಗೆ ಎಸೆಯುವೆವು.

قَالَ فَٱذۡهَبۡ فَإِنَّ لَكَ فِي ٱلۡحَيَوٰةِ أَن تَقُولَ لَا
مِسَاسَۖ وَإِنَّ لَكَ مَوۡعِدٗا لَّن تُخۡلَفَهُۥۖ وَٱنظُرۡ إِلَىٰٓ
إِلَٰهِكَ ٱلَّذِي ظَلۡتَ عَلَيۡهِ عَاكِفٗاۖ لَّنُحَرِّقَنَّهُۥ ثُمَّ
لَنَنسِفَنَّهُۥ فِي ٱلۡيَمِّ نَسۡفًا ٩٧

98. ಯಾರ ಹೊರತು ಆರಾಧಿಸಲು ಅರ್ಹರಾದ ಬೇರೆ ದೇವರಿಲ್ಲವೋ ಆ ಅಲ್ಲಾಹನೇ ನಿಮ್ಮ ದೇವನು. ಅವನ ಜ್ಞಾನವು ಎಲ್ಲಾ ವಸ್ತುಗಳನ್ನೂ ಆವರಿಸಿಕೊಂಡಿದೆ.

إِنَّمَآ إِلَٰهُكُمُ ٱللَّهُ ٱلَّذِي لَآ إِلَٰهَ إِلَّا هُوَۚ وَسِعَ
كُلَّ شَيۡءٍ عِلۡمٗا ٩٨

99. ಈ ರೀತಿ ಈಗಾಗಲೇ ನಡೆದು ಹೋದ ಅನೇಕ ಸಮಾಚಾರಗಳನ್ನು ನಾವು ನಿಮಗೆ ವಿವರಿಸಿಕೊಡು-ತ್ತೇವೆ. ನಿಶ್ಚಯವಾಗಿಯೂ ನಾವು ನಿಮಗೆ ನಮ್ಮ ಕಡೆಯ ಉಪದೇಶವನ್ನು ನೀಡಿದ್ದೇವೆ.

كَذَٰلِكَ نَقُصُّ عَلَيۡكَ مِنۡ أَنۢبَآءِ مَا قَدۡ سَبَقَۚ
وَقَدۡ ءَاتَيۡنَٰكَ مِن لَّدُنَّا ذِكۡرٗا ٩٩

100. ಯಾರು ಅದರಿಂದ ವಿಮುಖನಾಗುತ್ತಾನೋ ಅವನು ಪುನರುತ್ಥಾನ ದಿನದಂದು (ಪಾಪದ) ಹೊರೆಯನ್ನು ಖಂಡಿತ ಹೊರುವನು.

مَّنۡ أَعۡرَضَ عَنۡهُ فَإِنَّهُۥ يَحۡمِلُ يَوۡمَ ٱلۡقِيَٰمَةِ
وِزۡرًا ١٠٠

101. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಪುನರುತ್ಥಾನ

خَٰلِدِينَ فِيهِۖ وَسَآءَ لَهُمۡ يَوۡمَ ٱلۡقِيَٰمَةِ حِمۡلٗا ١٠١

---

ವಿಗ್ರಹಾರಾಧನೆಯನ್ನು ಸ್ಪಷ್ಟವಾಗಿ ವಿರೋಧಿಸಿದ್ದರು. ಆದರೆ ಎಷ್ಟೇ ತಿಳಿಹೇಳಿದರೂ ಜನರು ಅವರ ಮಾತನ್ನು ಕೇಳುತ್ತಿರಲಿಲ್ಲ. ನಂತರ ಪರಿಸ್ಥಿತಿ ಎಷ್ಟು ಗಂಭೀರವಾಯಿತೆಂದರೆ ಇಸ್ರಾಯೀಲ್ ಮಕ್ಕಳಲ್ಲಿ ಎರಡು ಗುಂಪುಗಳಾದವು. ಒಂದು ಗುಂಪು ಸಮರ್ಥಿಸಿದರೆ ಇನ್ನೊಂದು ಗುಂಪು ವಿರೋಧಿಸಿತು. ಈ ಎರಡು ಗುಂಪುಗಳು ಪರಸ್ಪರ ಹೊಡೆದಾಡುವ ಸ್ಥಿತಿಗೆ ತಲುಪಿತು.

[1] ಇಲ್ಲಿ ದೇವದೂತರು ಎಂದರೆ ಜಿಬ್ರೀಲ್ (ಅವರ ಮೇಲೆ ಶಾಂತಿಯಿರಲಿ). ಜಿಬ್ರೀಲರ ಕುದುರೆ ಹಾದುಹೋಗುವುದು ಕಂಡಾಗ ಸಾಮಿರಿ ಅದರ ಕಾಲುಗಳ ಅಡಿಯಿಂದ ಮಣ್ಣನ್ನು ತೆಗೆದು ಜೋಪಾನವಾಗಿಟ್ಟಿದ್ದನು. ಆ ಮಣ್ಣನ್ನು ಅವನು ಆಭರಣಗಳಿಂದ ನಿರ್ಮಿಸಿದ ಕರುವಿನ ಮೂರ್ತಿಗೆ ಹಾಕಿದಾಗ ಅದರಿಂದ ಒಂದು ಶಬ್ದ ಹೊರಬರಲು ಶುರುವಾಯಿತು.

[2] ಇದರ ನಂತರ ಅವನು ಜೀವನವಿಡೀ ಜನರನ್ನು ಕಂಡೊಡನೆ ನನ್ನನ್ನು ಮುಟ್ಟಬೇಡಿ, ನನ್ನಿಂದ ದೂರವಿರಿ ಎಂದು ಹೇಳುತ್ತಲೇ ಇದ್ದ. ಏಕೆಂದರೆ ಅವನನ್ನು ಯಾರಾದರೂ ಮುಟ್ಟಿದರೆ, ಅವನಿಗೂ ಮುಟ್ಟಿದವನಿಗೂ ಜ್ವರ ಬರುತ್ತಿತ್ತು. ನಂತರ ಅವನು ಜನವಾಸದಿಂದಊದೂರವಾಗಿ ಅಡವಿಗೆ ಹೋಗಿ ಮೃಗಗಳೊಡನೆ ವಾಸಿಸತೊಡಗಿದನು.

ದಿನದಂದು ಅವರು ಹೊರುವ ಹೊರೆಯು ಬಹಳ ನಿಕೃಷ್ಟವಾಗಿದೆ.

---

102. ಕಹಳೆಯಲ್ಲಿ ಊದಲಾಗುವ ದಿನ! ಅಂದು ನಾವು ಅಪರಾಧಿಗಳನ್ನು ನೀಲಿಕಣ್ಣಿನವರಾಗಿ ಒಟ್ಟು ಸೇರಿಸುವೆವು.

يَوۡمَ يُنفَخُ فِي ٱلصُّورِۚ وَنَحۡشُرُ ٱلۡمُجۡرِمِينَ يَوۡمَئِذٖ زُرۡقٗا ١٠٢

---

103. ಅವರು ಪರಸ್ಪರ ಪಿಸುಗುಡುತ್ತಾ ಹೇಳುವರು: “ನೀವು (ಭೂಮಿಯಲ್ಲಿ) ಕೇವಲ ಹತ್ತು ದಿನಗಳ ಕಾಲ ವಾಸವಾಗಿದ್ದಿರಿ.”

يَتَخَٰفَتُونَ بَيۡنَهُمۡ إِن لَّبِثۡتُمۡ إِلَّا عَشۡرٗا ١٠٣

---

104. ಅವರು ಏನು ಹೇಳುತ್ತಿದ್ದಾರೋ ಅದರ ನಿಜಸ್ಥಿತಿಯ ಬಗ್ಗೆ ನಾವು ಸ್ಪಷ್ಟವಾಗಿ ತಿಳಿದಿದ್ದೇವೆ. ಅವರಲ್ಲಿ ಅತ್ಯುತ್ತಮ ಮಾರ್ಗದಲ್ಲಿ-ರುವವನು ಹೇಳುವನು: “ನೀವು ಕೇವಲ ಒಂದು ದಿನ ಮಾತ್ರ ವಾಸವಾಗಿದ್ದಿರಿ.”[1]

نَّحۡنُ أَعۡلَمُ بِمَا يَقُولُونَ إِذۡ يَقُولُ أَمۡثَلُهُمۡ طَرِيقَةً إِن لَّبِثۡتُمۡ إِلَّا يَوۡمٗا ١٠٤

---

105. ಅವರು ನಿಮ್ಮಲ್ಲಿ ಪರ್ವತಗಳ ಬಗ್ಗೆ ಕೇಳುತ್ತಾರೆ. ಹೇಳಿರಿ: “ನನ್ನ ಪರಿಪಾಲಕ (ಅಲ್ಲಾಹು) ಅವುಗಳನ್ನು ಪುಡಿಪುಡಿ ಮಾಡಿ ಹಾರಿಸಿ ಬಿಡುವನು.

وَيَسۡـَٔلُونَكَ عَنِ ٱلۡجِبَالِ فَقُلۡ يَنسِفُهَا رَبِّي نَسۡفٗا ١٠٥

---

106. ಅವನು ಭೂಮಿಯನ್ನು ಸಮತಟ್ಟಾದ ಮೈದಾನದಂತೆ ಮಾಡುವನು.

فَيَذَرُهَا قَاعٗا صَفۡصَفٗا ١٠٦

---

107. ನೀವು ಅದರಲ್ಲಿ ಉಬ್ಬು-ತಗ್ಗುಗಳನ್ನು ಕಾಣಲಾರಿರಿ.

لَّا تَرَىٰ فِيهَا عِوَجٗا وَلَآ أَمۡتٗا ١٠٧

---

108. ಅಂದು ಜನರು ಕರೆ ನೀಡುವವನನ್ನು ಹಿಂಬಾಲಿಸುವರು. ಅವನ ಕರೆಗೆ ಯಾವುದೇ ವಕ್ರತೆಯಿರುವುದಿಲ್ಲ. ಪರಮ ದಯಾಮಯನ (ಅಲ್ಲಾಹನ) ಮುಂದೆ ಧ್ವನಿಗಳೆಲ್ಲವೂ ಶರಣಾಗುವುವು. ನಿಮಗೆ ಪಿಸುಮಾತುಗಳಲ್ಲದೆ ಬೇರೇನೂ ಕೇಳಿಸದು.[2]

يَوۡمَئِذٖ يَتَّبِعُونَ ٱلدَّاعِيَ لَا عِوَجَ لَهُۥۖ وَخَشَعَتِ ٱلۡأَصۡوَاتُ لِلرَّحۡمَٰنِ فَلَا تَسۡمَعُ إِلَّا هَمۡسٗا ١٠٨

---

109. ಅಂದು ಯಾರಿಗೂ ಶಿಫಾರಸು ಪ್ರಯೋಜನಪಡುವುದಿಲ್ಲ. ಪರಮ ದಯಾಮಯನು (ಅಲ್ಲಾಹು) ಯಾರಿಗೆ (ಶಿಫಾರಸು ಮಾಡಲು) ಅನುಮತಿ ನೀಡುತ್ತಾನೋ ಮತ್ತು ಯಾರ ಮಾತನ್ನು ಅವನು ಇಷ್ಟಪಡುತ್ತಾನೋ ಅವರ ಹೊರತು.

يَوۡمَئِذٖ لَّا تَنفَعُ ٱلشَّفَٰعَةُ إِلَّا مَنۡ أَذِنَ لَهُ ٱلرَّحۡمَٰنُ وَرَضِيَ لَهُۥ قَوۡلٗا ١٠٩

---

110. ಅವರ ಮುಂಭಾಗದಲ್ಲಿ ಮತ್ತು ಹಿಂಭಾಗದಲ್ಲಿರುವುದನ್ನು ಅವನು ತಿಳಿಯುತ್ತಾನೆ. ಜ್ಞಾನದ ಮೂಲಕ ಅವನನ್ನು ಸಂಪೂರ್ಣವಾಗಿ

يَعۡلَمُ مَا بَيۡنَ أَيۡدِيهِمۡ وَمَا خَلۡفَهُمۡ وَلَا يُحِيطُونَ بِهِۦ عِلۡمٗا ١١٠

---

[1] ಪರಲೋಕಕ್ಕೆ ಹೋಲಿಸಿದಾಗ ಇಹಲೋಕವು ಅವರಿಗೆ ಬಹಳ ಕಡಿಮೆ ಅವಧಿಯದ್ದಾಗಿ ಭಾಸವಾಗುವುದು.

[2] ಭೂಮಿಯಲ್ಲಿರುವ ಪರ್ವತಗಳು, ನದಿಗಳು, ಸಮುದ್ರಗಳೆಲ್ಲವೂ ನಾಶವಾಗಿ ಭೂಮಿ ಯಾವುದೇ ಉಬ್ಬುತಗ್ಗುಗಳಿಲ್ಲದೆ ಸಮತಟ್ಟು ಮೈದಾನವಾಗಿ ಮಾರ್ಪಡುತ್ತದೆ. ನಂತರ ಒಂದು ಧ್ವನಿ ಕೇಳುತ್ತದೆ. ಜನರೆಲ್ಲರೂ ಆ ಧ್ವನಿಯನ್ನು ಹಿಂಬಾಲಿಸುತ್ತಾ ಹೋಗುತ್ತಾರೆ. ಆ ಧ್ವನಿ ಕರೆಯುವ ಕಡೆಗಲ್ಲದೆ ಅವರು ಒಂದು ಚೂರು ಕೂಡ ಅತ್ತಿತ್ತ ಚಲಿಸುವುದಿಲ್ಲ. ಅಲ್ಲಿನ ವಾತಾವರಣ ಸಂಪೂರ್ಣ ನಿಶ್ಶಬ್ದವಾಗಿರುತ್ತದೆ. ಪಿಸು-ಮಾತುಗಳಲ್ಲದೆ ಬೇರೇನೂ ಕೇಳುವುದಿಲ್ಲ.

ಅವರಿಸಿಕೊಳ್ಳಲು ಅವರಿಗೆ ಸಾಧ್ಯವಿಲ್ಲ.

---

111. ನಿರಂತರ ಬದುಕಿರುವವನು ಮತ್ತು ಎಲ್ಲವನ್ನೂ ನಿಯಂತ್ರಿಸುವ ಅಲ್ಲಾಹನ ಮುಂದೆ ಮುಖಗಳೆಲ್ಲವೂ ಶರಣಾಗುವುವು. ಅನ್ಯಾಯದ ಹೊರೆ ಹೊತ್ತವನು ಪರಾಜಿತನಾದನು.

وَعَنَتِ ٱلْوُجُوهُ لِلْحَىِّ ٱلْقَيُّومِ ۖ وَقَدْ خَابَ مَنْ
حَمَلَ ظُلْمًا ١١١

---

112. ಯಾರು ಸತ್ಯವಿಶ್ವಾಸಿಯಾಗಿರುತ್ತಾ, ಸತ್ಕರ್ಮಗಳನ್ನು ಮಾಡುತ್ತಾನೋ ಅವನು ಅನ್ಯಾಯವನ್ನು ಅಥವಾ ನಾಶ-ನಷ್ಟ-ವನ್ನು ಭಯಪಡಬೇಕಾಗಿಲ್ಲ.

وَمَن يَعْمَلْ مِنَ ٱلصَّٰلِحَٰتِ وَهُوَ مُؤْمِنٌ فَلَا
يَخَافُ ظُلْمًا وَلَا هَضْمًا ١١٢

---

113. ಈ ರೀತಿ ನಾವು ಇದನ್ನು ಅರಬ್ಬಿ ಭಾಷೆಯ ಗ್ರಂಥವಾಗಿ ಅವತೀ-ರ್ಣಗೊಳಿಸಿದೆವು. ನಾವು ಅದರಲ್ಲಿ ಎಚ್ಚರಿಕೆಗಳನ್ನು ಅನೇಕ ವಿಧಗಳಲ್ಲಿ ವಿವರಿಸಿದ್ದೇವೆ. ಅವರು ದೇವಭಯವುಳ್ಳವರಾಗಲಿ ಅಥವಾ ಅವರ ಮನಸ್ಸುಗಳಲ್ಲಿ ಚಿಂತನೆ ಮೂಡಲಿ ಎಂದು.

وَكَذَٰلِكَ أَنزَلْنَٰهُ قُرْءَانًا عَرَبِيًّا وَصَرَّفْنَا فِيهِ مِنَ
ٱلْوَعِيدِ لَعَلَّهُمْ يَتَّقُونَ أَوْ يُحْدِثُ لَهُمْ ذِكْرًا ١١٣

---

114. ಅಲ್ಲಾಹು ಅತ್ಯುನ್ನತನು ಮತ್ತು ನಿಜವಾದ ಸಾರ್ವಭೌ-ಮನಾಗಿದ್ದಾನೆ. ಕುರ್‌ಆನಿನ ದೇವವಾಣಿಯನ್ನು ನಿಮಗೆ ಓದಿಕೊಟ್ಟು ಮುಗಿಸುವುದಕ್ಕೆ ಮುನ್ನ ನೀವು ಅದನ್ನು ಪಠಿಸಲು ಆತುರಪಡಬೇಡಿ. "ನನ್ನ ಪರಿಪಾಲಕನೇ! ನನಗೆ ಜ್ಞಾನವನ್ನು ಹೆಚ್ಚಿಸು" ಎಂದು ಪ್ರಾರ್ಥಿಸಿರಿ.

فَتَعَٰلَى ٱللَّهُ ٱلْمَلِكُ ٱلْحَقُّ ۗ وَلَا تَعْجَلْ بِٱلْقُرْءَانِ
مِن قَبْلِ أَن يُقْضَىٰٓ إِلَيْكَ وَحْيُهُۥ ۖ وَقُل رَّبِّ
زِدْنِى عِلْمًا ١١٤

---

115. ನಾವು ಆದಮರಿಗೆ ಮೊದಲೇ ದೃಢ ಆಜ್ಞೆಯನ್ನು ನೀಡಿದ್ದೆವು. ಆದರೆ ಅವರು ಅದನ್ನು ಮರೆತರು. ನಾವು ಅವರಲ್ಲಿ ಯಾವುದೇ ದೃಢನಿರ್ಧಾರವನ್ನು ಕಂಡಿಲ್ಲ.

وَلَقَدْ عَهِدْنَآ إِلَىٰٓ ءَادَمَ مِن قَبْلُ فَنَسِىَ وَلَمْ
نَجِدْ لَهُۥ عَزْمًا ١١٥

---

116. "ನೀವು ಆದಮರಿಗೆ ಸಾಷ್ಟಾಂಗ ಮಾಡಿರಿ" ಎಂದು ನಾವು ದೇವದೂತರಿಗೆ ಆಜ್ಞಾಪಿಸಿದ ಸಂದರ್ಭ. ಅವರು ಸಾಷ್ಟಾಂಗ ಮಾಡಿದರು; ಆದರೆ ಇಬ್ಲೀಸನ ಹೊರತು. ಅವನು ನಿರಾಕರಿಸಿದನು.

وَإِذْ قُلْنَا لِلْمَلَٰٓئِكَةِ ٱسْجُدُوا۟ لِءَادَمَ فَسَجَدُوٓا۟
إِلَّآ إِبْلِيسَ أَبَىٰ ١١٦

---

117. ಆಗ ನಾವು ಹೇಳಿದೆವು: "ಓ ಆದಮ್! ಈತ ನಿಮ್ಮ ಮತ್ತು ನಿಮ್ಮ ಪತ್ನಿಯ ವೈರಿಯಾಗಿದ್ದಾನೆ. ಈತ ನಿಮ್ಮನ್ನು ಸ್ವರ್ಗದಿಂದ ಹೊರಹೋಗುವಂತೆ ಮಾಡುವ ಪ್ರಸಂಗ ಬರದಿರಲಿ. ಹಾಗೇನಾದರೂ ಆದರೆ ನೀವು ಕಷ್ಟ ಅನುಭವಿಸುವಿರಿ.

فَقُلْنَا يَٰٓـَٔادَمُ إِنَّ هَٰذَا عَدُوٌّ لَّكَ وَلِزَوْجِكَ فَلَا
يُخْرِجَنَّكُمَا مِنَ ٱلْجَنَّةِ فَتَشْقَىٰٓ ١١٧

---

118. ಇಲ್ಲಿ ನಿಮಗೆ ಖಂಡಿತ ಹಸಿವೆಯೋ ನಗ್ನತೆಯೋ ಇಲ್ಲ.

إِنَّ لَكَ أَلَّا تَجُوعَ فِيهَا وَلَا تَعْرَىٰ ١١٨

---

119. ಇಲ್ಲಿ ನಿಮಗೆ ದಾಹವೋ ಬಿಸಿಲಿನ ತಾಪವೋ ಇಲ್ಲ.

وَأَنَّكَ لَا تَظْمَؤُا۟ فِيهَا وَلَا تَضْحَىٰ ١١٩

---

120. ಆದರೆ ಶೈತಾನನು ಅವರಿಗೆ ದುಷ್ಪ್ರೇರಣೆ ಮಾಡಿದನು: "ಓ

فَوَسْوَسَ إِلَيْهِ ٱلشَّيْطَٰنُ قَالَ يَٰٓـَٔادَمُ هَلْ أَدُلُّكَ

عَلَىٰ شَجَرَةِ ٱلْخُلْدِ وَمُلْكٍ لَّا يَبْلَىٰ ﴿١٢٠﴾

ಆದಮ್! ನಾನು ನಿಮಗೆ ಶಾಶ್ವತ ಬದುಕನ್ನು ನೀಡುವ ಒಂದು ಮರದ ಕುರಿತು ಮತ್ತು ಎಂದೂ ಹಳೆಯದಾಗದ ಸಾಮ್ರಾಜ್ಯದ ಕುರಿತು ತಿಳಿಸಿಕೊಡಲೇ?"

---

فَأَكَلَا مِنْهَا فَبَدَتْ لَهُمَا سَوْءَٰتُهُمَا وَطَفِقَا يَخْصِفَانِ عَلَيْهِمَا مِن وَرَقِ ٱلْجَنَّةِ ۚ وَعَصَىٰٓ ءَادَمُ رَبَّهُۥ فَغَوَىٰ ﴿١٢١﴾

121. ನಂತರ ಅವರಿಬ್ಬರು (ಆದಮ್ ಮತ್ತು ಹವ್ವಾ) ಆ ಮರದ ಹಣ್ಣನ್ನು ತಿಂದರು. ಆಗ ಅವರಿಗೆ ಅವರ ಗುಹ್ಯಭಾಗಗಳು ಪ್ರಕಟವಾದವು. ಅವರು ಸ್ವರ್ಗದ ಎಲೆಗಳನ್ನು ಜೋಡಿಸಿ ತಮ್ಮ ದೇಹಗಳನ್ನು ಮುಚ್ಚತೊಡಗಿದರು. ಆದಮ್ ತನ್ನ ಪರಿಪಾಲಕನ (ಅಲ್ಲಾಹನ) ಆಜ್ಞೋಲ್ಲಂಘನೆ ಮಾಡಿದರು. ಆದ್ದರಿಂದ ಅವರು ತಪ್ಪಿ ನಡೆದರು.

---

ثُمَّ ٱجْتَبَٰهُ رَبُّهُۥ فَتَابَ عَلَيْهِ وَهَدَىٰ ﴿١٢٢﴾

122. ನಂತರ ಅವರ ಪರಿಪಾಲಕನು (ಅಲ್ಲಾಹು) ಅವರನ್ನು ಆರಿಸಿದನು. ಅವರ ಪಶ್ಚಾತ್ತಾಪವನ್ನು ಸ್ವೀಕರಿಸಿ ಅವರಿಗೆ ಮಾರ್ಗದರ್ಶನ ಮಾಡಿದನು.

---

قَالَ ٱهْبِطَا مِنْهَا جَمِيعًۢا ۖ بَعْضُكُمْ لِبَعْضٍ عَدُوٌّ ۖ فَإِمَّا يَأْتِيَنَّكُم مِّنِّى هُدًى فَمَنِ ٱتَّبَعَ هُدَاىَ فَلَا يَضِلُّ وَلَا يَشْقَىٰ ﴿١٢٣﴾

123. ಅಲ್ಲಾಹು ಹೇಳಿದನು: "ನೀವಿಬ್ಬರೂ ಒಟ್ಟಿಗೆ ಇಲ್ಲಿಂದ ಇಳಿಯಿರಿ. ನೀವು ಪರಸ್ಪರ ವೈರಿಗಳಾಗಿದ್ದೀರಿ. ನನ್ನ ಕಡೆಯಿಂದ ನಿಮಗೆ ಮಾರ್ಗದರ್ಶನವು ಬರುವಾಗ, ಯಾರು ನನ್ನ ಮಾರ್ಗದರ್ಶನವನ್ನು ಅನುಸರಿಸುತ್ತಾನೋ ಅವನು ದಾರಿತಪ್ಪುವುದಿಲ್ಲ ಮತ್ತು ಕಷ್ಟ ಅನುಭವಿಸುವುದಿಲ್ಲ.

---

وَمَنْ أَعْرَضَ عَن ذِكْرِى فَإِنَّ لَهُۥ مَعِيشَةً ضَنكًا وَنَحْشُرُهُۥ يَوْمَ ٱلْقِيَٰمَةِ أَعْمَىٰ ﴿١٢٤﴾

124. ಆದರೆ ಯಾರು ನನ್ನ ಸ್ಮರಣೆಯನ್ನು ಕಡೆಗಣಿಸಿ ವಿಮುಖನಾಗುತ್ತಾನೋ—ನಿಶ್ಚಯವಾಗಿಯೂ ಅವನಿಗೆ ಇಕ್ಕಟ್ಟಾದ ಜೀವನವಿರುವುದು. ಪುನರುತ್ಥಾನ ದಿನದಂದು ನಾವು ಅವನನ್ನು ಕುರುಡನಾಗಿ ಎಬ್ಬಿಸುವೆವು."

---

قَالَ رَبِّ لِمَ حَشَرْتَنِىٓ أَعْمَىٰ وَقَدْ كُنتُ بَصِيرًا ﴿١٢٥﴾

125. ಅವನು ಕೇಳುವನು: "ನನ್ನ ಪರಿಪಾಲಕನೇ! ನೀನು ನನ್ನನ್ನು ಕುರುಡನಾಗಿ ಏಕೆ ಎಬ್ಬಿಸಿದೆ? ನನಗೆ ಕಣ್ಣು ಕಾಣುತ್ತಿತ್ತಲ್ಲವೇ?"

---

قَالَ كَذَٰلِكَ أَتَتْكَ ءَايَٰتُنَا فَنَسِيتَهَا ۖ وَكَذَٰلِكَ ٱلْيَوْمَ تُنسَىٰ ﴿١٢٦﴾

126. ಅಲ್ಲಾಹು ಹೇಳುವನು: "ಈ ರೀತಿಯೇ ಆಗಿದೆ. ನಮ್ಮ ವಚನಗಳು ನಿನ್ನ ಬಳಿಗೆ ಬಂದಾಗ ನೀನು ಅದನ್ನು ಮರೆತುಬಿಟ್ಟೆ. ಅದೇ ರೀತಿ ಇಂದು ನೀನು ಕೂಡ ಮರೆಯಲಾಗಿರುವೆ."

---

وَكَذَٰلِكَ نَجْزِى مَنْ أَسْرَفَ وَلَمْ يُؤْمِنۢ بِـَٔايَٰتِ رَبِّهِۦ ۚ وَلَعَذَابُ ٱلْءَاخِرَةِ أَشَدُّ وَأَبْقَىٰٓ ﴿١٢٧﴾

127. ಹದ್ದು ಮೀರುವವರಿಗೆ ಮತ್ತು ತಮ್ಮ ಪರಿಪಾಲಕನ (ಅಲ್ಲಾಹನ) ವಚನಗಳಲ್ಲಿ ವಿಶ್ವಾಸವಿಡದವರಿಗೆ ನಾವು ಈ ರೀತಿ ಪ್ರತಿಫಲವನ್ನು ನೀಡುವೆವು. ಪರಲೋಕದ ಶಿಕ್ಷೆಯಂತೂ ಅತಿಕಠೋರ ಮತ್ತು ಶಾಶ್ವತವಾಗಿದೆ.

---

أَفَلَمْ يَهْدِ لَهُمْ كَمْ أَهْلَكْنَا قَبْلَهُم مِّنَ

128. ಅವರಿಗಿಂತ ಮೊದಲು ನಾವು ಎಷ್ಟೋ ತಲೆಮಾರುಗಳನ್ನು

ನಾಶ ಮಾಡಿದ್ದೇವೆ ಎಂಬ ಸಂಗತಿಯು ಅವರನ್ನು ಸನ್ಮಾರ್ಗಕ್ಕೆ ಒಯ್ಯುವುದಿಲ್ಲವೇ? ವಾಸ್ತವವಾಗಿ, ಅವರ ವಾಸಸ್ಥಳಗಳಲ್ಲಿ ಇವರು ನಡೆದಾಡುತ್ತಿದ್ದಾರೆ. ನಿಶ್ಚಯವಾಗಿಯೂ ಬುದ್ಧಿವಂತರಿಗೆ ಇದರಲ್ಲಿ ಅನೇಕ ದೃಷ್ಟಾಂತಗಳಿವೆ.

ٱلْقُرُونِ يَمْشُونَ فِى مَسَٰكِنِهِمْ ۗ إِنَّ فِى ذَٰلِكَ لَءَايَٰتٍ لِّأُو۟لِى ٱلنُّهَىٰ ﴿١٢٨﴾

---

129. ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಒಂದು ಮಾತು ಮೊದಲೇ ಇಲ್ಲದಿರುತ್ತಿದ್ದರೆ, ಮತ್ತು ಒಂದು ನಿಶ್ಚಿತ ಅವಧಿಯನ್ನು ಮೊದಲೇ ತೀರ್ಮಾನಿಸಲಾಗದಿರುತ್ತಿದ್ದರೆ, ಶಿಕ್ಷೆಯು ಇವರಿಗೆ ಅನಿವಾರ್ಯವಾಗಿ ಬಿಡುತ್ತಿತ್ತು.

وَلَوْلَا كَلِمَةٌ سَبَقَتْ مِن رَّبِّكَ لَكَانَ لِزَامًا وَأَجَلٌ مُّسَمًّى ﴿١٢٩﴾

---

130. ಆದ್ದರಿಂದ ಅವರು ಹೇಳುತ್ತಿರುವ ಮಾತುಗಳ ಬಗ್ಗೆ ತಾಳ್ಮೆಯಿಂದಿರಿ. ಸೂರ್ಯೋದಯಕ್ಕೆ ಮೊದಲು ಮತ್ತು ಸೂರ್ಯಾಸ್ತಕ್ಕೆ ಮೊದಲು ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಸ್ತುತಿಸುತ್ತಾ ಅವನ ಪರಿಶುದ್ಧತೆಯನ್ನು ಕೊಂಡಾಡಿರಿ. ರಾತ್ರಿಯ ಕೆಲವು ತಾಸುಗಳಲ್ಲೂ, ಹಗಲಿನ ಕೆಲವು ಭಾಗಗಳಲ್ಲೂ ಅವನ ಪರಿಶುದ್ಧತೆಯನ್ನು ಕೊಂಡಾಡಿರಿ. ನೀವು ಸಂತೃಪ್ತರಾಗುವುದಕ್ಕಾಗಿ.

فَٱصْبِرْ عَلَىٰ مَا يَقُولُونَ وَسَبِّحْ بِحَمْدِ رَبِّكَ قَبْلَ طُلُوعِ ٱلشَّمْسِ وَقَبْلَ غُرُوبِهَا ۖ وَمِنْ ءَانَآئِ ٱلَّيْلِ فَسَبِّحْ وَأَطْرَافَ ٱلنَّهَارِ لَعَلَّكَ تَرْضَىٰ ﴿١٣٠﴾

---

131. ಅವರಲ್ಲಿರುವ ಪಂಗಡಗಳಿಗೆ ನಾವು ಏನೇನು ಸವಲತ್ತುಗಳನ್ನು ಒದಗಿಸಿದ್ದೇವೆಯೋ ಅದರ ಕಡೆಗೆ ನೀವು ನಿಮ್ಮ ದೃಷ್ಟಿಯನ್ನು ಹರಿಸಬೇಡಿ. ಅವೆಲ್ಲವೂ ಇಹಲೋಕದ ಸೊಬಗುಗಳಾಗಿವೆ. ಅದರ ಮೂಲಕ ನಾವು ಅವರನ್ನು ಪರೀಕ್ಷಿಸುತ್ತೇವೆ. ನಿಮ್ಮ ಪರಿಪಾಲಕನು (ಅಲ್ಲಾಹು) ಒದಗಿಸುವ ಉಪಜೀವನವು ಅತ್ಯುತ್ತಮ ಮತ್ತು ಶಾಶ್ವತವಾಗಿದೆ.

وَلَا تَمُدَّنَّ عَيْنَيْكَ إِلَىٰ مَا مَتَّعْنَا بِهِۦٓ أَزْوَٰجًا مِّنْهُمْ زَهْرَةَ ٱلْحَيَوٰةِ ٱلدُّنْيَا لِنَفْتِنَهُمْ فِيهِ ۚ وَرِزْقُ رَبِّكَ خَيْرٌ وَأَبْقَىٰ ﴿١٣١﴾

---

132. ನಿಮ್ಮ ಕುಟುಂಬದವರಿಗೆ ನಮಾಝ್ ನಿರ್ವಹಿಸಲು ಆದೇಶಿಸಿರಿ. ಅದರಲ್ಲಿ (ನಮಾಝ್‌ನಲ್ಲಿ) ಸ್ಥೈರ್ಯದಿಂದಿರಿ. ನಾವು ನಿಮ್ಮಿಂದ ಆಹಾರವನ್ನು ಬೇಡುವುದಿಲ್ಲ. ನಾವೇ ನಿಮಗೆ ಆಹಾರ ಒದಗಿಸುತ್ತೇವೆ. ಅಂತಿಮ ಫಲಿತಾಂಶವಿರುವುದು ದೇವಭಯಕ್ಕಾಗಿದೆ.

وَأْمُرْ أَهْلَكَ بِٱلصَّلَوٰةِ وَٱصْطَبِرْ عَلَيْهَا ۖ لَا نَسْـَٔلُكَ رِزْقًا ۖ نَّحْنُ نَرْزُقُكَ ۗ وَٱلْعَٰقِبَةُ لِلتَّقْوَىٰ ﴿١٣٢﴾

---

133. ಅವರು ಹೇಳಿದರು: “ಅವರು (ಪ್ರವಾದಿ) ತಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ನಮ್ಮ ಬಳಿಗೆ ಒಂದು ದೃಷ್ಟಾಂತವನ್ನೇಕೆ ತರುವುದಿಲ್ಲ?” ಹಿಂದಿನ ಗ್ರಂಥಗಳಲ್ಲಿರುವ ಸ್ಪಷ್ಟ ಸಾಕ್ಷ್ಯವು ಅವರ ಬಳಿಗೆ ಬಂದಿಲ್ಲವೇ?

وَقَالُوا۟ لَوْلَا يَأْتِينَا بِـَٔايَةٍ مِّن رَّبِّهِۦٓ ۚ أَوَلَمْ تَأْتِهِم بَيِّنَةُ مَا فِى ٱلصُّحُفِ ٱلْأُولَىٰ ﴿١٣٣﴾

---

134. ಇವರಿಗಿಂತ (ಪ್ರವಾದಿಗಿಂತ) ಮೊದಲೇ ನಾವು ಅವರನ್ನು

وَلَوْ أَنَّآ أَهْلَكْنَٰهُم بِعَذَابٍ مِّن قَبْلِهِۦ لَقَالُوا۟

رَبَّنَا لَوْلَآ أَرْسَلْتَ إِلَيْنَا رَسُولًا فَنَتَّبِعَ ءَايَٰتِكَ مِن قَبْلِ أَن نَّذِلَّ وَنَخْزَىٰ ١٣٤

ಯಾವುದಾದರೂ ಶಿಕ್ಷೆಯ ಮೂಲಕ ನಾಶ ಮಾಡುತ್ತಿದ್ದರೆ, ಅವರು ಹೇಳುತ್ತಿದ್ದರು: "ನಮ್ಮ ಪರಿಪಾಲಕನೇ! ನೀನು ನಮ್ಮ ಬಳಿಗೆ ಒಬ್ಬ ಸಂದೇಶವಾಹಕನನ್ನು ಏಕೆ ಕಳುಹಿಸಲಿಲ್ಲ? ಹಾಗೇನಾದರೂ ಕಳುಹಿಸುತ್ತಿದ್ದರೆ ಈ ಅವಮಾನ ಮತ್ತು ನಾಚಿಗೆಗೇಡನ್ನು ಅನುಭವಿಸುವುದಕ್ಕೆ ಮೊದಲೇ ನಾವು ನಿನ್ನ ವಚನಗಳನ್ನು ಅನುಸರಿಸುತ್ತಿದ್ದೆವು."

---

قُلْ كُلٌّ مُّتَرَبِّصٌ فَتَرَبَّصُوا۟ ۖ فَسَتَعْلَمُونَ مَنْ أَصْحَٰبُ ٱلصِّرَٰطِ ٱلسَّوِىِّ وَمَنِ ٱهْتَدَىٰ ١٣٥

135. ಹೇಳಿರಿ: "ಎಲ್ಲರೂ (ತಮ್ಮ ಫಲಿತಾಂಶವನ್ನು) ಕಾಯುತ್ತಿದ್ದಾರೆ. ನೀವು ಕೂಡ ಕಾಯಿರಿ. ಸರಿಯಾದ ಮಾರ್ಗದಲ್ಲಿರುವವರು ಯಾರು ಮತ್ತು ಸನ್ಮಾರ್ಗವನ್ನು ಪಡೆದವರು ಯಾರೆಂದು ನೀವು ಸದ್ಯವೇ ತಿಳಿಯುವಿರಿ.

# 21. ಅಲ್-ಅಂಬಿಯಾ

بِسْمِ ٱللَّهِ ٱلرَّحْمَٰنِ ٱلرَّحِيمِ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

---

ٱقْتَرَبَ لِلنَّاسِ حِسَابُهُمْ وَهُمْ فِى غَفْلَةٍ مُّعْرِضُونَ ١

1. ಜನರಿಗೆ ವಿಚಾರಣೆಯ ಸಮಯವು ಸನ್ನಿಹಿತವಾಗಿದೆ. ಆದರೂ ಅವರು ನಿರ್ಲಕ್ಷ್ಯದಿಂದ ವಿಮುಖರಾಗುತ್ತಿದ್ದಾರೆ.

---

مَا يَأْتِيهِم مِّن ذِكْرٍ مِّن رَّبِّهِم مُّحْدَثٍ إِلَّا ٱسْتَمَعُوهُ وَهُمْ يَلْعَبُونَ ٢

2. ಅವರಿಗೆ ಅವರ ಪರಿಪಾಲಕನಿಂದ (ಅಲ್ಲಾಹನಿಂದ) ಯಾವುದೇ ಹೊಸ ಉಪದೇಶವು ಬಂದಾಗಲೆಲ್ಲಾ ಅವರು ಆಟವಾಡುತ್ತಲೇ ಅದಕ್ಕೆ ಕಿವಿಗೊಡುತ್ತಾರೆ.

---

لَاهِيَةً قُلُوبُهُمْ ۗ وَأَسَرُّوا۟ ٱلنَّجْوَى ٱلَّذِينَ ظَلَمُوا۟ هَلْ هَٰذَآ إِلَّا بَشَرٌ مِّثْلُكُمْ ۖ أَفَتَأْتُونَ ٱلسِّحْرَ وَأَنتُمْ تُبْصِرُونَ ٣

3. ಅವರ ಹೃದಯಗಳು ಸಂಪೂರ್ಣ ನಿರ್ಲಕ್ಷ್ಯದಲ್ಲಿವೆ. ಅಕ್ರಮಿಗಳು ಪರಸ್ಪರ ರಹಸ್ಯವಾಗಿ ಮಾತನಾಡುತ್ತಾ ಕೇಳುತ್ತಾರೆ: "ಇವನು ನಿಮ್ಮಂತಹ ಒಬ್ಬ ಮನುಷ್ಯನಲ್ಲವೇ? ನಿಮಗೆ ದೃಷ್ಟಿಯಿದ್ದೂ ಸಹ ನೀವು ಮಾಟಗಾರಿಕೆಗೆ ಬಲಿಯಾಗುತ್ತೀರಾ?"

---

قَالَ رَبِّى يَعْلَمُ ٱلْقَوْلَ فِى ٱلسَّمَآءِ وَٱلْأَرْضِ ۖ وَهُوَ ٱلسَّمِيعُ ٱلْعَلِيمُ ٤

4. ಪ್ರವಾದಿ ಹೇಳಿದರು: "ಆಕಾಶ ಮತ್ತು ಭೂಮಿಯಲ್ಲಿರುವ ಎಲ್ಲಾ ಮಾತುಗಳನ್ನು ನನ್ನ ಪರಿಪಾಲಕನು (ಅಲ್ಲಾಹು) ಬಹಳ ಚೆನ್ನಾಗಿ ತಿಳಿಯುತ್ತಾನೆ. ಅವನು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ."

---

بَلْ قَالُوٓا۟ أَضْغَٰثُ أَحْلَٰمٍۭ بَلِ ٱفْتَرَىٰهُ بَلْ هُوَ شَاعِرٌ فَلْيَأْتِنَا بِـَٔايَةٍ كَمَآ أُرْسِلَ ٱلْأَوَّلُونَ ٥

5. ಅಷ್ಟೇ ಅಲ್ಲ; ಅವರು ಹೇಳಿದರು: "ಈ ಕುರ್‌ಆನ್ ಅರ್ಥಶೂನ್ಯ ಕನಸುಗಳ ಮಿಶ್ರಣವಾಗಿದೆ. ಅಲ್ಲ; ಅವನೇ (ಪ್ರವಾದಿ) ಅದನ್ನು ಸ್ವಯಂ ರಚಿಸಿ ತಂದಿದ್ದಾನೆ. ಅಲ್ಲ, ಅವನೊಬ್ಬ ಕವಿಯಾಗಿದ್ದಾನೆ. ಇಲ್ಲದಿದ್ದರೆ, ಹಿಂದಿನ ಪ್ರವಾದಿಗಳು ತಂದಂತಹ ಯಾವುದಾದರೂ

ದೃಷ್ಟಾಂತವನ್ನು ಇವನು ಕೂಡ ತಂದು ತೋರಿಸಲಿ.”

6. ಇವರಿಗಿಂತ ಮೊದಲು ನಾವು ನಾಶ ಮಾಡಿದ ಯಾವುದೇ ಊರಿನವರೂ ವಿಶ್ವಾಸವಿಟ್ಟಿರಲಿಲ್ಲ. ಹೀಗಿರುವಾಗ ಇವರು ವಿಶ್ವಾಸವಿಡುವರೇ?

مَآ ءَامَنَتۡ قَبۡلَهُم مِّن قَرۡيَةٍ أَهۡلَكۡنَٰهَآۖ أَفَهُمۡ يُؤۡمِنُونَ ۝٦

7. ನಿಮಗಿಂತ ಮೊದಲು ನಾವು ಎಷ್ಟು ಸಂದೇಶವಾಹಕರನ್ನು ಕಳುಹಿಸಿದ್ದೆವೋ ಅವರೆಲ್ಲರೂ ನಾವು ದೇವವಾಣಿ ನೀಡಿದ ಪುರುಷರಾಗಿದ್ದರು. ನಿಮಗೆ ಗೊತ್ತಿಲ್ಲದಿದ್ದರೆ ಗ್ರಂಥದವರೊಡನೆ ಕೇಳಿ ನೋಡಿ.

وَمَآ أَرۡسَلۡنَا قَبۡلَكَ إِلَّا رِجَالٗا نُّوحِيٓ إِلَيۡهِمۡۖ فَسۡـَٔلُوٓاْ أَهۡلَ ٱلذِّكۡرِ إِن كُنتُمۡ لَا تَعۡلَمُونَ ۝٧

8. ಅವರನ್ನು ನಾವು ಆಹಾರ ಸೇವಿಸದ ದೇಹಗಳನ್ನಾಗಿ ಮತ್ತು ಶಾಶ್ವತವಾಗಿ ವಾಸಿಸುವವರನ್ನಾಗಿ ಮಾಡಿಲ್ಲ.

وَمَا جَعَلۡنَٰهُمۡ جَسَدٗا لَّا يَأۡكُلُونَ ٱلطَّعَامَ وَمَا كَانُواْ خَٰلِدِينَ ۝٨

9. ನಂತರ ನಾವು ಅವರಿಗೆ ನೀಡಿದ ಎಲ್ಲಾ ವಾಗ್ದಾನಗಳನ್ನು ಸತ್ಯವಾಗಿ ನೆರವೇರಿಸಿಕೊಟ್ಟೆವು. ಅವರನ್ನು ಮತ್ತು ನಾವು ರಕ್ಷಿಸಬೇಕೆಂದು ಇಚ್ಛಿಸಿದವರನ್ನು ರಕ್ಷಿಸಿದೆವು. ಎಲ್ಲೆ ಮೀರಿದವರನ್ನು ನಾವು ನಾಶ ಮಾಡಿದೆವು.

ثُمَّ صَدَقۡنَٰهُمُ ٱلۡوَعۡدَ فَأَنجَيۡنَٰهُمۡ وَمَن نَّشَآءُ وَأَهۡلَكۡنَا ٱلۡمُسۡرِفِينَ ۝٩

10. ನಿಶ್ಚಯವಾಗಿಯೂ ನಾವು ನಿಮಗೆ ಒಂದು ಗ್ರಂಥವನ್ನು ಅವತೀ-ರ್ಣಗೊಳಿಸಿದ್ದೇವೆ. ಅದರಲ್ಲಿ ನಿಮಗೆ ಉಪದೇಶವಿದೆ. ಆದರೂ ನೀವು ಆಲೋಚಿಸುವುದಿಲ್ಲವೇ?

لَقَدۡ أَنزَلۡنَآ إِلَيۡكُمۡ كِتَٰبٗا فِيهِ ذِكۡرُكُمۡۚ أَفَلَا تَعۡقِلُونَ ۝١٠

11. ಅಕ್ರಮವೆಸಗುತ್ತಿದ್ದ ಎಷ್ಟೋ ಊರುಗಳನ್ನು ನಾವು ನಾಶ ಮಾಡಿದ್ದೇವೆ. ಅದರ ನಂತರ ನಾವು ಬೇರೊಂದು ಜನತೆಯನ್ನು ಸೃಷ್ಟಿಸಿದೆವು.

وَكَمۡ قَصَمۡنَا مِن قَرۡيَةٖ كَانَتۡ ظَالِمَةٗ وَأَنشَأۡنَا بَعۡدَهَا قَوۡمًا ءَاخَرِينَ ۝١١

12. ಅವರಿಗೆ ನಮ್ಮ ಶಿಕ್ಷೆಯ ಅನುಭವವಾದಾಗ ಅಗೋ! ಅವರು ಅದರಿಂದ ಓಡಿ ಪಾರಾಗಲು ಯತ್ನಿಸುತ್ತಾರೆ.

فَلَمَّآ أَحَسُّواْ بَأۡسَنَآ إِذَا هُم مِّنۡهَا يَرۡكُضُونَ ۝١٢

13. ಓಡಬೇಡಿ! ನಾವು ನಿಮಗೆ ಒದಗಿಸಿದ ಆಡಂಬರಗಳ ಕಡೆಗೆ ಮತ್ತು ನಿಮ್ಮ ವಸತಿಗಳ ಕಡೆಗೆ ಬನ್ನಿರಿ. ನಿಮ್ಮೊಂದಿಗೆ ಪ್ರಶ್ನಿಸುವುದಕ್ಕಾಗಿ.[1]

لَا تَرۡكُضُواْ وَٱرۡجِعُوٓاْ إِلَىٰ مَآ أُتۡرِفۡتُمۡ فِيهِ وَمَسَٰكِنِكُمۡ لَعَلَّكُمۡ تُسۡـَٔلُونَ ۝١٣

14. ಅವರು ಹೇಳಿದರು: “ಅಯ್ಯೋ! ನಮ್ಮ ದುರ್ಗತಿಯೇ! ನಿಜಕ್ಕೂ ನಾವು ಅಕ್ರಮಿಗಳೇ ಆಗಿದ್ದೆವು.”

قَالُواْ يَٰوَيۡلَنَآ إِنَّا كُنَّا ظَٰلِمِينَ ۝١٤

15. ಅವರು ಹೀಗೆ ರೋದಿಸುತ್ತಲೇ ಇದ್ದರು. ಎಲ್ಲಿಯವರೆಗೆಂದರೆ,

فَمَا زَالَت تِّلۡكَ دَعۡوَىٰهُمۡ حَتَّىٰ جَعَلۡنَٰهُمۡ

[1] ಅಂದರೆ ಅವರೊಡನೆ, ನಿಮಗೇನಾಯಿತು? ನಿಮಗೆ ಈ ಪರಿಸ್ಥಿತಿ ಏಕೆ ಬಂತು? ಎಂದು ಕೇಳುವುದಕ್ಕಾಗಿ. ಇದು ಅಪಹಾಸ್ಯದ ರೂಪದಲ್ಲಿರುವ ಪ್ರಶ್ನೆಯಾಗಿದೆ.

ನಾವು ಅವರನ್ನು ಬುಡದಿಂದ ಕತ್ತರಿಸಲಾದ ತೆನೆಗಳಂತೆ ಮತ್ತು ಆರಿಹೋದ ಬೆಂಕಿಯಂತೆ ಮಾಡುವ ತನಕ.

حَصِيدًا خَٰمِدِينَ ﴿١٥﴾

---

16. ನಾವು ಭೂಮ್ಯಾಕಾಶಗಳನ್ನು ಅಥವಾ ಅವುಗಳ ನಡುವೆಯಿರುವ ವಸ್ತುಗಳನ್ನು ಆಟಕ್ಕಾಗಿ ಸೃಷ್ಟಿಸಿಲ್ಲ.

وَمَا خَلَقْنَا ٱلسَّمَآءَ وَٱلْأَرْضَ وَمَا بَيْنَهُمَا لَٰعِبِينَ ﴿١٦﴾

---

17. ಮನರಂಜನೆಯು ನಮ್ಮ ಉದ್ದೇಶವಾಗಿದ್ದರೆ, ನಾವು ಅದನ್ನು ನಮ್ಮ ಬಳಿಯಲ್ಲೇ ಮಾಡುತ್ತಿದ್ದೆವು. ನಾವು ಹಾಗೆ ಮಾಡುವವರಾಗಿದ್ದರೆ.

لَوْ أَرَدْنَآ أَن نَّتَّخِذَ لَهْوًا لَّٱتَّخَذْنَٰهُ مِن لَّدُنَّآ إِن كُنَّا فَٰعِلِينَ ﴿١٧﴾

---

18. ಬದಲಿಗೆ, ನಾವು ಸತ್ಯವನ್ನು ಅಸತ್ಯದ ಮೇಲೆ ಎಸೆಯುತ್ತೇವೆ. ಆಗ ಅದು ಅಸತ್ಯವನ್ನು ಒಡೆದು ಹಾಕುತ್ತದೆ. ಆಗ ಅದು (ಅಸತ್ಯ) ತಕ್ಷಣ ನಾಶವಾಗುತ್ತದೆ. ನೀವು (ಅಲ್ಲಾಹನ ಬಗ್ಗೆ) ಆರೋಪಿಸುವ ಮಾತುಗಳಿಂದಾಗಿ ನಿಮಗೆ ವಿನಾಶವು ಕಾದಿದೆ.

بَلْ نَقْذِفُ بِٱلْحَقِّ عَلَى ٱلْبَٰطِلِ فَيَدْمَغُهُۥ فَإِذَا هُوَ زَاهِقٌ ۚ وَلَكُمُ ٱلْوَيْلُ مِمَّا تَصِفُونَ ﴿١٨﴾

---

19. ಭೂಮ್ಯಾಕಾಶಗಳಲ್ಲಿರುವ ಎಲ್ಲರೂ ಅವನಿಗೆ ಸೇರಿದವರು. ಅವನ ಬಳಿಯಿರುವವರು (ದೇವದೂತರು) ಅವನನ್ನು ಆರಾಧಿಸಲು ಅಹಂಕಾರಪಡುವುದಿಲ್ಲ. ಅವರು ದಣಿಯುವುದೂ ಇಲ್ಲ.

وَلَهُۥ مَن فِى ٱلسَّمَٰوَٰتِ وَٱلْأَرْضِ ۚ وَمَنْ عِندَهُۥ لَا يَسْتَكْبِرُونَ عَنْ عِبَادَتِهِۦ وَلَا يَسْتَحْسِرُونَ ﴿١٩﴾

---

20. ಅವರು ರಾತ್ರಿ-ಹಗಲು ಅಲ್ಲಾಹನ ಪರಿಶುದ್ಧತೆಯನ್ನು ಕೊಂಡಾಡುತ್ತಾರೆ. ಅವರಿಗೆ ಸುಸ್ತಾಗುವುದಿಲ್ಲ.

يُسَبِّحُونَ ٱلَّيْلَ وَٱلنَّهَارَ لَا يَفْتُرُونَ ﴿٢٠﴾

---

21. ಅವರು ಭೂಮಿಯಲ್ಲಿ ಯಾರನ್ನು ದೇವರಾಗಿ ಸ್ವೀಕರಿಸಿದ್ದಾರೋ ಅವರು (ಸತ್ತವರಿಗೆ) ಜೀವ ನೀಡುತ್ತಾರೆಯೇ?

أَمِ ٱتَّخَذُوٓا۟ ءَالِهَةً مِّنَ ٱلْأَرْضِ هُمْ يُنشِرُونَ ﴿٢١﴾

---

22. ಭೂಮ್ಯಾಕಾಶಗಳಲ್ಲಿ ಅಲ್ಲಾಹನ ಹೊರತು ಬೇರೆ ದೇವರುಗಳು ಇರುತ್ತಿದ್ದರೆ ಅವು ನಾಶವಾಗಿ ಹೋಗುತ್ತಿದ್ದವು.[1] ಅವರು ಸುಳ್ಳು ಸುಳ್ಳಾಗಿ ಆರೋಪಿಸುವ ಎಲ್ಲದ್ದರಿಂದಲೂ ಸಿಂಹಾಸನದ ಒಡೆಯನಾದ ಅಲ್ಲಾಹು ಎಷ್ಟೋ ಪರಿಶುದ್ಧನಾಗಿದ್ದಾನೆ.

لَوْ كَانَ فِيهِمَآ ءَالِهَةٌ إِلَّا ٱللَّهُ لَفَسَدَتَا ۚ فَسُبْحَٰنَ ٱللَّهِ رَبِّ ٱلْعَرْشِ عَمَّا يَصِفُونَ ﴿٢٢﴾

---

23. ಅವನು (ಅಲ್ಲಾಹು) ಏನು ಮಾಡುತ್ತಾನೋ ಅದರ ಬಗ್ಗೆ ಅವನು ಯಾರಿಗೂ ಉತ್ತರ ಕೊಡಬೇಕಾಗಿಲ್ಲ. ಆದರೆ ಅವರು (ಮನುಷ್ಯರು) ಉತ್ತರದಾಯಿಗಳಾಗಿದ್ದಾರೆ.

لَا يُسْـَٔلُ عَمَّا يَفْعَلُ وَهُمْ يُسْـَٔلُونَ ﴿٢٣﴾

---

24. ಅವರು ಅಲ್ಲಾಹನನ್ನು ಬಿಟ್ಟು ಬೇರೆ ದೇವರುಗಳನ್ನು ಸ್ವೀ-ಕರಿಸಿದ್ದಾರೆಯೇ? ಹೇಳಿರಿ: “ಅದಕ್ಕೆ ನಿಮ್ಮ ಬಳಿಯಿರುವ

أَمِ ٱتَّخَذُوا۟ مِن دُونِهِۦٓ ءَالِهَةً ۖ قُلْ هَاتُوا۟ بُرْهَٰنَكُمْ ۖ هَٰذَا ذِكْرُ مَن مَّعِىَ وَذِكْرُ

---

[1] ಒಂದು ಬಸ್ಸಿಗೆ ಎರಡು ಚಾಲಕರಿದ್ದರೆ ಏನಾಗಬಹುದು? ಒಂದು ದೇಶಕ್ಕೆ ಎರಡು ಪ್ರಧಾನಿಗಳಿದ್ದರೆ ಏನಾಗಬಹುದು? ಇಬ್ಬರೂ ಎಲ್ಲಾ ವಿಷಯಗಳಲ್ಲೂ ಒಂದೇ ರೀತಿಯ ಅಭಿಪ್ರಾಯವನ್ನು ಹೊಂದುವುದು ಅಸಂಭವ. ಹಾಗೆಯೇ ವಿಶ್ವಕ್ಕೆ ಎರಡು ಅಥವಾ ಅದಕ್ಕಿಂತ ಹೆಚ್ಚು ದೇವರುಗಳಿದ್ದರೆ ವಿಶ್ವವು ಎಂದೋ ನಾಶವಾಗಿ ಹೋಗುತ್ತಿತ್ತು.

ಸಾಕ್ಷ್ಯಾಧಾರಗಳನ್ನು ತನ್ನಿರಿ.” ಇದು (ಕುರ್‌ಆನ್) ನನ್ನ ಜೊತೆ-ಯಲ್ಲಿರುವವರಿಗೆ ಮತ್ತು ನನಗಿಂತ ಮೊದಲಿನವರಿಗೆ ಇರುವ ಉಪದೇಶವಾಗಿದೆ. ಆದರೆ ಅವರಲ್ಲಿ ಹೆಚ್ಚಿನವರಿಗೂ ಸತ್ಯವೇನೆಂದು ತಿಳಿದಿಲ್ಲ. ಆದ್ದರಿಂದ ಅವರು ವಿಮುಖರಾಗುತ್ತಿದ್ದಾರೆ.

مِن قَبۡلِيۚ بَلۡ أَكۡثَرُهُمۡ لَا يَعۡلَمُونَ ٱلۡحَقَّۖ
فَهُم مُّعۡرِضُونَ ٢٤

---

25. ನಿಮಗಿಂತ ಮೊದಲು ನಾವು ಯಾವೆಲ್ಲಾ ಸಂದೇಶವಾಹಕ-ರುಗಳನ್ನು ಕಳುಹಿಸಿದ್ದೇವೋ ಅವರೆಲ್ಲರಿಗೂ, “ನನ್ನ ಹೊರತು ಆರಾಧನೆಗೆ ಅರ್ಹರಾದ ಬೇರೆ ದೇವರಿಲ್ಲ. ಆದ್ದರಿಂದ ನನ್ನನ್ನು ಮಾತ್ರ ಆರಾಧಿಸಿರಿ” ಎಂಬ ದೇವವಾಣಿಯನ್ನೇ ನೀಡಿದ್ದೆವು.

وَمَآ أَرۡسَلۡنَا مِن قَبۡلِكَ مِن رَّسُولٍ إِلَّا نُوحِيٓ
إِلَيۡهِ أَنَّهُۥ لَآ إِلَٰهَ إِلَّآ أَنَا۠ فَٱعۡبُدُونِ ٢٥

---

26. ಅವರು ಹೇಳಿದರು: “ಪರಮ ದಯಾಮಯನಿಗೆ (ಅಲ್ಲಾಹನಿಗೆ) ಮಕ್ಕಳಿದ್ದಾರೆ.” ಅವನು ಪರಿಶುದ್ಧನು. ಅಲ್ಲ, ವಾಸ್ತವವಾಗಿ ಅವರು ಅವನ ಸನ್ಮಾನ್ಯ ದಾಸರಾಗಿದ್ದಾರೆ.

وَقَالُواْ ٱتَّخَذَ ٱلرَّحۡمَٰنُ وَلَدٗاۗ سُبۡحَٰنَهُۥۚ بَلۡ عِبَادٞ
مُّكۡرَمُونَ ٢٦

---

27. ಅಲ್ಲಾಹು ಮಾತನಾಡುವುದಕ್ಕೆ ಮೊದಲೇ ಅವರು ಮಾತನಾಡುವುದಿಲ್ಲ. ಅವರು ಅವನ ಆಜ್ಞೆಯಂತೆ ಕೆಲಸ ಮಾಡುತ್ತಾರೆ.

لَا يَسۡبِقُونَهُۥ بِٱلۡقَوۡلِ وَهُم بِأَمۡرِهِۦ يَعۡمَلُونَ ٢٧

---

28. ಅವರ ಮುಂಭಾಗದಲ್ಲಿ ಮತ್ತು ಹಿಂಭಾಗದಲ್ಲಿರುವ ಎಲ್ಲವನ್ನೂ ಅವನು ತಿಳಿಯುತ್ತಾನೆ. ಅವನ ಸಂಪ್ರೀತಿಗೆ ಪಾತ್ರರಾದವರಿಗೆ ಮಾತ್ರ ಅವರು ಶಿಫಾರಸು ಮಾಡುತ್ತಾರೆ. ಅವರು ಅವನ ಭಯದಿಂದ ತರಗುಟ್ಟುತ್ತಾರೆ.

يَعۡلَمُ مَا بَيۡنَ أَيۡدِيهِمۡ وَمَا خَلۡفَهُمۡ وَلَا
يَشۡفَعُونَ إِلَّا لِمَنِ ٱرۡتَضَىٰ وَهُم مِّنۡ خَشۡيَتِهِۦ
مُشۡفِقُونَ ٢٨

---

29. “ಅಲ್ಲಾಹನ ಹೊರತು ನಾನೇ ದೇವನು” ಎಂದು ಅವರಲ್ಲಿ ಯಾರು ಹೇಳುತ್ತಾನೋ, ಅವನಿಗೆ ನಾವು ಪ್ರತಿಫಲವಾಗಿ ನರಕಾಗ್ನಿಯನ್ನು ನೀಡುವೆವು. ಅಕ್ರಮಿಗಳಿಗೆ ನಾವು ಹೀಗೆಯೇ ಪ್ರತಿಫಲ ನೀಡುತ್ತೇವೆ.

۞وَمَن يَقُلۡ مِنۡهُمۡ إِنِّيٓ إِلَٰهٞ مِّن دُونِهِۦ فَذَٰلِكَ
نَجۡزِيهِ جَهَنَّمَۚ كَذَٰلِكَ نَجۡزِي ٱلظَّٰلِمِينَ ٢٩

---

30. ಭೂಮ್ಯಾಕಾಶಗಳು ಪರಸ್ಪರ ಅಂಟಿಕೊಂಡಿದ್ದವು ಮತ್ತು ನಾವು ಅವುಗಳನ್ನು ಬೇರ್ಪಡಿಸಿದೆವು ಎಂದು ಸತ್ಯನಿಷೇಧಿಗಳು ನೋಡುವುದಿಲ್ಲವೇ? ಜೀವವಿರುವ ಎಲ್ಲ ವಸ್ತುಗಳನ್ನೂ ನಾವು ನೀರಿನಿಂದ ಉಂಟು ಮಾಡಿದೆವು. ಆದರೂ ಅವರು ವಿಶ್ವಾಸವಿಡುವುದಿಲ್ಲವೇ?

أَوَلَمۡ يَرَ ٱلَّذِينَ كَفَرُوٓاْ أَنَّ ٱلسَّمَٰوَٰتِ وَٱلۡأَرۡضَ
كَانَتَا رَتۡقٗا فَفَتَقۡنَٰهُمَاۖ وَجَعَلۡنَا مِنَ ٱلۡمَآءِ كُلَّ
شَيۡءٍ حَيٍّۚ أَفَلَا يُؤۡمِنُونَ ٣٠

---

31. ಭೂಮಿಯು ಅವರೊಂದಿಗೆ ಅಲುಗಾಡದಿರಲು ನಾವು ಅದರಲ್ಲಿ ದೃಢವಾಗಿ ನಿಲ್ಲುವ ಪರ್ವತಗಳನ್ನು ಸ್ಥಾಪಿಸಿದೆವು. ನಾವು ಅದರಲ್ಲಿ ವಿಶಾಲವಾದ ಮಾರ್ಗಗಳನ್ನು ಮಾಡಿದೆವು. ಅವರು ದಾರಿ

وَجَعَلۡنَا فِي ٱلۡأَرۡضِ رَوَٰسِيَ أَن تَمِيدَ
بِهِمۡ وَجَعَلۡنَا فِيهَا فِجَاجٗا سُبُلٗا
لَّعَلَّهُمۡ يَهۡتَدُونَ ٣١

ಕಾಣುವುದಕ್ಕಾಗಿ.

32. ನಾವು ಆಕಾಶವನ್ನು ಭದ್ರ ಮೇಲ್ಛಾವಣಿಯನ್ನಾಗಿ ಮಾಡಿದೆವು. ಆದರೆ ಅವರು ಆಕಾಶದ ದೃಷ್ಟಾಂತಗಳ ಬಗ್ಗೆ ನಿರ್ಲಕ್ಷ್ಯರಾಗಿದ್ದಾರೆ.

وَجَعَلۡنَا ٱلسَّمَآءَ سَقۡفٗا مَّحۡفُوظٗاۖ وَهُمۡ عَنۡ ءَايَٰتِهَا مُعۡرِضُونَ ٣٢

33. ಅವನೇ ರಾತ್ರಿ-ಹಗಲು ಮತ್ತು ಸೂರ್ಯ-ಚಂದ್ರರನ್ನು ಸೃಷ್ಟಿಸಿದವನು. ಎಲ್ಲವೂ ಒಂದು ನಿಗದಿತ ಕಕ್ಷೆಯಲ್ಲಿ ಈಜುತ್ತಿವೆ.

وَهُوَ ٱلَّذِي خَلَقَ ٱلَّيۡلَ وَٱلنَّهَارَ وَٱلشَّمۡسَ وَٱلۡقَمَرَۖ كُلّٞ فِي فَلَكٖ يَسۡبَحُونَ ٣٣

34. (ಪ್ರವಾದಿಯವರೇ) ನಿಮಗಿಂತ ಮೊದಲು ನಾವು ಯಾವುದೇ ವ್ಯಕ್ತಿಗೂ ಶಾಶ್ವತ ಬದುಕನ್ನು ನೀಡಿಲ್ಲ. ಹೀಗಿರುವಾಗ, ನೀವು ನಿಧನರಾದರೆ ಅವರು ಶಾಶ್ವತವಾಗಿ ಉಳಿಯುವರೇ?

وَمَا جَعَلۡنَا لِبَشَرٖ مِّن قَبۡلِكَ ٱلۡخُلۡدَۖ أَفَإِيْن مِّتَّ فَهُمُ ٱلۡخَٰلِدُونَ ٣٤

35. ಪ್ರತಿಯೊಂದು ಜೀವಿಯೂ ಮರಣದ ರುಚಿಯನ್ನು ನೋಡಲಿದೆ. ನಾವು ಪರೀಕ್ಷೆಯ ರೂಪದಲ್ಲಿ ನಿಮ್ಮೆಲ್ಲರನ್ನೂ ಒಳಿತು ಮತ್ತು ಕೆಡುಕುಗಳಲ್ಲಿ ಪರೀಕ್ಷಿಸುತ್ತೇವೆ. ನೀವೆಲ್ಲರೂ ನಮ್ಮ ಬಳಿಗೇ ಮರಳಿ ಬರುವಿರಿ.

كُلُّ نَفۡسٖ ذَآئِقَةُ ٱلۡمَوۡتِۗ وَنَبۡلُوكُم بِٱلشَّرِّ وَٱلۡخَيۡرِ فِتۡنَةٗۖ وَإِلَيۡنَا تُرۡجَعُونَ ٣٥

36. ಸತ್ಯನಿಷೇಧಿಗಳು ನಿಮ್ಮನ್ನು ನೋಡಿದಾಗಲೆಲ್ಲಾ ನಿಮ್ಮನ್ನು ತಮಾಷೆ ಮಾಡುತ್ತಾ, “ನಿಮ್ಮ ದೇವರುಗಳ ಬಗ್ಗೆ ಅವಹೇಳನದ ಮಾತುಗಳನ್ನು ಹೇಳುವವನು ಇವನೇ ಏನು?” ಎಂದು (ಪರಸ್ಪರ) ಕೇಳುತ್ತಾರೆ. ಅವರಂತೂ ಪರಮ ದಯಾಮಯನ (ಅಲ್ಲಾಹನ) ಸ್ಮರಣೆಯನ್ನು ನಿಷೇಧಿಸಿದ್ದಾರೆ.

وَإِذَا رَءَاكَ ٱلَّذِينَ كَفَرُوٓاْ إِن يَتَّخِذُونَكَ إِلَّا هُزُوًا أَهَٰذَا ٱلَّذِي يَذۡكُرُ ءَالِهَتَكُمۡ وَهُم بِذِكۡرِ ٱلرَّحۡمَٰنِ هُمۡ كَٰفِرُونَ ٣٦

37. ಮಾನವನನ್ನು ಆತುರ ಜೀವಿಯಾಗಿ ಸೃಷ್ಟಿಸಲಾಗಿದೆ. ನಾನು ಸದ್ಯವೇ ನನ್ನ ದೃಷ್ಟಾಂತಗಳನ್ನು ನಿಮಗೆ ತೋರಿಸಿಕೊಡಲಿದ್ದೇನೆ. ಆದ್ದರಿಂದ ನೀವು ನನ್ನೊಂದಿಗೆ ತ್ವರೆ ಮಾಡಬೇಡಿ.

خُلِقَ ٱلۡإِنسَٰنُ مِنۡ عَجَلٖۚ سَأُوْرِيكُمۡ ءَايَٰتِي فَلَا تَسۡتَعۡجِلُونِ ٣٧

38. ಅವರು ಕೇಳುತ್ತಾರೆ: “ನೀವು ಸತ್ಯವನ್ನೇ ಹೇಳುವವರಾಗಿದ್ದರೆ ಈ ವಾಗ್ದಾನವು ನಿಜವಾಗುವುದು ಯಾವಾಗ ಎಂದು ಹೇಳಿರಿ?”

وَيَقُولُونَ مَتَىٰ هَٰذَا ٱلۡوَعۡدُ إِن كُنتُمۡ صَٰدِقِينَ ٣٨

39. ತಮ್ಮ ಮುಖಗಳಿಂದ ಮತ್ತು ಬೆನ್ನುಗಳಿಂದ ಬೆಂಕಿಯನ್ನು ತಡೆಯಲು ಸಾಧ್ಯವಾಗದ ಮತ್ತು ಯಾವುದೇ ಸಹಾಯವು ದೊರಕದ ಆ ಒಂದು ಸಮಯದ ಬಗ್ಗೆ ಸತ್ಯನಿಷೇಧಿಗಳು ತಿಳಿದಿದ್ದರೆ!

لَوۡ يَعۡلَمُ ٱلَّذِينَ كَفَرُواْ حِينَ لَا يَكُفُّونَ عَن وُجُوهِهِمُ ٱلنَّارَ وَلَا عَن ظُهُورِهِمۡ وَلَا هُمۡ يُنصَرُونَ ٣٩

40. ಅಲ್ಲ; ಅಂತ್ಯ ಸಮಯವು ಅವರ ಬಳಿಗೆ ಹಠಾತ್ತನೆ ಬರಲಿದೆ. ಅದು ಅವರನ್ನು ತಬ್ಬಿಬ್ಬುಗೊಳಿಸಲಿದೆ. ಅದನ್ನು ತಡೆಗಟ್ಟಲು ಅವರಿಗೆ ಸಾಧ್ಯವಾಗುವುದಿಲ್ಲ. ಅವರಿಗೆ ಕಾಲಾವಕಾಶವನ್ನೂ ನೀಡಲಾಗುವುದಿಲ್ಲ.

بَلۡ تَأۡتِيهِم بَغۡتَةٗ فَتَبۡهَتُهُمۡ فَلَا يَسۡتَطِيعُونَ رَدَّهَا وَلَا هُمۡ يُنظَرُونَ ٤٠

41. ನಿಮಗಿಂತ ಮೊದಲು ಅನೇಕ ಸಂದೇಶವಾಹಕರು ಅಪಹಾಸ್ಯಕ್ಕೆ ಗುರಿಯಾಗಿದ್ದಾರೆ. ಅವರನ್ನು ಅಪಹಾಸ್ಯ ಮಾಡಿದವರನ್ನು ನಂತರ ಅವರು ಅಪಹಾಸ್ಯ ಮಾಡುತ್ತಿದ್ದ ವಿಷಯವೇ ಆವರಿಸಿಬಿಟ್ಟಿತು.

وَلَقَدِ ٱسۡتُهۡزِئَ بِرُسُلٖ مِّن قَبۡلِكَ فَحَاقَ بِٱلَّذِينَ
سَخِرُواْ مِنۡهُم مَّا كَانُواْ بِهِۦ يَسۡتَهۡزِءُونَ ٤١

42. ಹೇಳಿರಿ: “ನಿಮ್ಮನ್ನು ಪರಮ ದಯಾಮಯನಿಂದ (ಅಲ್ಲಾಹನಿಂದ) ಹಗಲು-ರಾತ್ರಿ ರಕ್ಷಣೆ ಮಾಡಲು ಯಾರಿದ್ದಾರೆ?” ಅಲ್ಲ; ವಾಸ್ತವವಾಗಿ ಅವರು ತಮ್ಮ ಪರಿಪಾಲಕನ (ಅಲ್ಲಾಹನ) ಸ್ಮರಣೆಯಿಂದ ವಿಮುಖರಾಗಿದ್ದಾರೆ.

قُلۡ مَن يَكۡلَؤُكُم بِٱلَّيۡلِ وَٱلنَّهَارِ مِنَ ٱلرَّحۡمَٰنِۚ بَلۡ
هُمۡ عَن ذِكۡرِ رَبِّهِم مُّعۡرِضُونَ ٤٢

43. ಅವರ ರಕ್ಷಣೆ ಮಾಡಲು ಅವರಿಗೆ ನಮ್ಮ ಹೊರತು ಬೇರೆ ದೇವರುಗಳು ಇದ್ದಾರೆಯೇ? ಆ ದೇವರುಗಳಿಗೆ ಸ್ವಯಂ ಸಹಾಯ ಮಾಡಲು ಸಾಧ್ಯವಾಗುವುದಿಲ್ಲ. ಅವರಿಗೆ ನಮ್ಮ ಕಡೆಯಿಂದಲೂ ರಕ್ಷಣೆ ಸಿಗುವುದಿಲ್ಲ.

أَمۡ لَهُمۡ ءَالِهَةٞ تَمۡنَعُهُم مِّن دُونِنَاۚ لَا يَسۡتَطِيعُونَ
نَصۡرَ أَنفُسِهِمۡ وَلَا هُم مِّنَّا يُصۡحَبُونَ ٤٣

44. ಅಲ್ಲ; ನಾವು ಇವರಿಗೆ ಮತ್ತು ಇವರ ಪೂರ್ವಜರಿಗೆ ಸವಲತ್ತು-ಗಳನ್ನು ನೀಡಿದೆವು. ಹೀಗೆ ಅವರು ದೀರ್ಘಕಾಲ ಬಾಳಿ ಬದುಕಿದರು. ನಾವು ಭೂಮಿಯನ್ನು ಅದರ ಅಂಚುಗಳಿಂದ ಕುಗ್ಗಿಸುತ್ತಿರುವುದನ್ನು ಅವರು ನೋಡುವುದಿಲ್ಲವೇ?[1] ಹೀಗಿದ್ದೂ ಅವರೇ ವಿಜಯಿಗಳಾಗುವರೇ?

بَلۡ مَتَّعۡنَا هَٰٓؤُلَآءِ وَءَابَآءَهُمۡ حَتَّىٰ طَالَ عَلَيۡهِمُ
ٱلۡعُمُرُۗ أَفَلَا يَرَوۡنَ أَنَّا نَأۡتِي ٱلۡأَرۡضَ نَنقُصُهَا مِنۡ
أَطۡرَافِهَآۚ أَفَهُمُ ٱلۡغَٰلِبُونَ ٤٤

45. (ಪ್ರವಾದಿಯವರೇ) ಹೇಳಿರಿ: “ನಾನು ನಿಮಗೆ ದೇವವಾಣಿಯ ಆಧಾರದಲ್ಲಿ ಎಚ್ಚರಿಕೆ ನೀಡುತ್ತಿದ್ದೇನೆ.” ಅವರಿಗೆ ಎಚ್ಚರಿಕೆ ನೀಡಲಾಗುವಾಗ ಕಿವಿ ಕೇಳದವರು ಆ ಕರೆಯನ್ನು ಕೇಳಲಾರರು.

قُلۡ إِنَّمَآ أُنذِرُكُم بِٱلۡوَحۡيِۚ وَلَا يَسۡمَعُ ٱلصُّمُّ
ٱلدُّعَآءَ إِذَا مَا يُنذَرُونَ ٤٥

46. ಅವರಿಗೆ ನಿಮ್ಮ ಪರಿಪಾಲಕನ (ಅಲ್ಲಾಹನ) ಶಿಕ್ಷೆಯ ಒಂದು ಸುಳಿವು ತಾಗಿದರೆ ಸಾಕು, ಅವರು ಹೇಳುವರು: “ಅಯ್ಯೋ! ನಮ್ಮ ದುರ್ಗತಿಯೇ! ನಿಜಕ್ಕೂ ನಾವು ಅಕ್ರಮಿಗಳಾಗಿದ್ದೆವು.”

وَلَئِن مَّسَّتۡهُمۡ نَفۡحَةٞ مِّنۡ عَذَابِ رَبِّكَ لَيَقُولُنَّ
يَٰوَيۡلَنَآ إِنَّا كُنَّا ظَٰلِمِينَ ٤٦

47. ಪುನರುತ್ಥಾನ ದಿನದಂದು ನಾವು ನ್ಯಾಯಯುತ ತಕ್ಕಡಿಗಳನ್ನು ಸ್ಥಾಪಿಸುವೆವು. ಅಂದು ಯಾವುದೇ ವ್ಯಕ್ತಿಗೂ ಅನ್ಯಾಯವಾ-ಗುವುದಿಲ್ಲ. ಅವರು ಮಾಡಿದ ಕರ್ಮವು ಒಂದು ಸಾಸಿವೆ ಕಾಳಿನ ತೂಕದಷ್ಟಿದ್ದರೂ ನಾವು ಅದನ್ನು ತರುವೆವು. ವಿಚಾರಣೆ ಮಾಡುವವರಾಗಿ ನಾವು ಯಥೇಷ್ಟ ಸಾಕು.

وَنَضَعُ ٱلۡمَوَٰزِينَ ٱلۡقِسۡطَ لِيَوۡمِ ٱلۡقِيَٰمَةِ فَلَا
تُظۡلَمُ نَفۡسٞ شَيۡـٔٗاۖ وَإِن كَانَ مِثۡقَالَ حَبَّةٖ مِّنۡ
خَرۡدَلٍ أَتَيۡنَا بِهَاۗ وَكَفَىٰ بِنَا حَٰسِبِينَ ٤٧

48. ನಾವು ಮೂಸಾ ಮತ್ತು ಹಾರೂನರಿಗೆ ಸತ್ಯಾಸತ್ಯ

وَلَقَدۡ ءَاتَيۡنَا مُوسَىٰ وَهَٰرُونَ ٱلۡفُرۡقَانَ وَضِيَآءٗ

[1] ಅಂದರೆ ಸತ್ಯನಿಷೇಧಿಗಳ ವಶದಲ್ಲಿರುವ ಪ್ರದೇಶಗಳು ಕುಗ್ಗುತ್ತಿರುವುದನ್ನು ಅವರು ನೋಡುವುದಿಲ್ಲವೇ? ಇಸ್ಲಾಂ ಧರ್ಮವು ಬೆಳೆದಂತೆ ಸತ್ಯ-ನಿಷೇಧಿಗಳ ವಶದಲ್ಲಿದ್ದ ಪ್ರದೇಶಗಳೆಲ್ಲವೂ ಒಂದೊಂದಾಗಿ ಮುಸಲ್ಮಾನರ ವಶಕ್ಕೆ ಬಂದವು.

ವಿವೇಚನೆಯನ್ನು, ಪ್ರಕಾಶವನ್ನು ಮತ್ತು ದೇವಭಯವುಳ್ಳವರಿಗೆ ಉಪದೇಶವನ್ನು ನೀಡಿದೆವು.

وَذِكۡرٗا لِّلۡمُتَّقِينَ ﴿٤٨﴾

---

49. ಅವರು (ದೇವಭಯವುಳ್ಳವರು) ಯಾರೆಂದರೆ, ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಅದೃಶ್ಯರೂಪದಲ್ಲಿ ಭಯಪಡುವವರು ಮತ್ತು ಅಂತ್ಯಸಮಯದ ವಿಷಯದಲ್ಲಿ ಅತೀವ ಆತಂಕದಲ್ಲಿರುವವರು.

ٱلَّذِينَ يَخۡشَوۡنَ رَبَّهُم بِٱلۡغَيۡبِ وَهُم مِّنَ ٱلسَّاعَةِ مُشۡفِقُونَ ﴿٤٩﴾

---

50. ಇದು (ಕುರ್‌ಆನ್) ನಾವು ಅವತೀರ್ಣಗೊಳಿಸಿದ ಸಮೃದ್ಧಪೂರ್ಣ ಉಪದೇಶವಾಗಿದೆ. ಆದರೂ ನೀವು ಅದನ್ನು ನಿರಾಕರಿಸುತ್ತೀರಾ?

وَهَٰذَا ذِكۡرٞ مُّبَارَكٌ أَنزَلۡنَٰهُۚ أَفَأَنتُمۡ لَهُۥ مُنكِرُونَ ﴿٥٠﴾

---

51. ಇದಕ್ಕೆ ಮೊದಲು ನಾವು ಇಬ್ರಾಹೀಮರಿಗೆ ವಿವೇಚನೆಯನ್ನು ನೀಡಿದ್ದೆವು. ನಾವು ಅವರ ಸ್ಥಿತಿಗತಿಗಳ ಬಗ್ಗೆ ತಿಳಿದವರಾಗಿದ್ದೆವು.

وَلَقَدۡ ءَاتَيۡنَآ إِبۡرَٰهِيمَ رُشۡدَهُۥ مِن قَبۡلُ وَكُنَّا بِهِۦ عَٰلِمِينَ ﴿٥١﴾

---

52. ಅವರು ತಮ್ಮ ತಂದೆ ಮತ್ತು ಊರ ಜನರೊಡನೆ ಕೇಳಿದ ಸಂದರ್ಭ: "ನೀವು ಧ್ಯಾನ ನಿರತರಾಗಿ ಕುಳಿತುಕೊಳ್ಳುವ ಈ ವಿಗ್ರಹಗಳು ಏನು?"

إِذۡ قَالَ لِأَبِيهِ وَقَوۡمِهِۦ مَا هَٰذِهِ ٱلتَّمَاثِيلُ ٱلَّتِيٓ أَنتُمۡ لَهَا عَٰكِفُونَ ﴿٥٢﴾

---

53. ಅವರು ಉತ್ತರಿಸಿದರು: "ನಮ್ಮ ಪೂರ್ವಜರು ಇವುಗಳನ್ನು ಆರಾಧಿಸುವುದನ್ನು ನಾವು ನೋಡಿದ್ದೇವೆ."

قَالُواْ وَجَدۡنَآ ءَابَآءَنَا لَهَا عَٰبِدِينَ ﴿٥٣﴾

---

54. ಇಬ್ರಾಹೀಮ್ ಹೇಳಿದರು: "ನಿಜಕ್ಕೂ ನೀವು ಮತ್ತು ನಿಮ್ಮ ಪೂರ್ವಜರು ಸ್ಪಷ್ಟ ದುರ್ಮಾರ್ಗದಲ್ಲಿದ್ದೀರಿ."

قَالَ لَقَدۡ كُنتُمۡ أَنتُمۡ وَءَابَآؤُكُمۡ فِي ضَلَٰلٖ مُّبِينٖ ﴿٥٤﴾

---

55. ಅವರು ಕೇಳಿದರು: "ನೀನು ನಮ್ಮ ಬಳಿಗೆ ಸತ್ಯವನ್ನು ತಂದಿದ್ದೀಯಾ? ಅಥವಾ ಕೇವಲ ತಮಾಷೆಗಾಗಿ ಹೇಳುತ್ತಿದ್ದೀಯಾ?"

قَالُوٓاْ أَجِئۡتَنَا بِٱلۡحَقِّ أَمۡ أَنتَ مِنَ ٱللَّٰعِبِينَ ﴿٥٥﴾

---

56. ಇಬ್ರಾಹೀಮ್ ಹೇಳಿದರು: "ಭೂಮ್ಯಾಕಾಶಗಳನ್ನು ಸೃಷ್ಟಿಸಿದ ಅವುಗಳ ಪರಿಪಾಲಕನೇ (ಅಲ್ಲಾಹನೇ) ನಿಮ್ಮ ಪರಿಪಾಲಕ. ನಾನು ಅದಕ್ಕೆ ಸಾಕ್ಷಿಯಾಗಿರುವವರಲ್ಲಿ ಒಬ್ಬನು.

قَالَ بَل رَّبُّكُمۡ رَبُّ ٱلسَّمَٰوَٰتِ وَٱلۡأَرۡضِ ٱلَّذِي فَطَرَهُنَّ وَأَنَا۠ عَلَىٰ ذَٰلِكُم مِّنَ ٱلشَّٰهِدِينَ ﴿٥٦﴾

---

57. ಅಲ್ಲಾಹನಾಣೆ! ನೀವು ಇಲ್ಲಿಂದ ತಿರುಗಿ ಹೊರಟುಹೋದ ಬಳಿಕ ನಾನು ನಿಮ್ಮ ವಿಗ್ರಹಗಳ ವಿರುದ್ಧ ಒಂದು ಸಂಚು ರೂಪಿಸುತ್ತೇನೆ."

وَتَٱللَّهِ لَأَكِيدَنَّ أَصۡنَٰمَكُم بَعۡدَ أَن تُوَلُّواْ مُدۡبِرِينَ ﴿٥٧﴾

---

58. ನಂತರ ಇಬ್ರಾಹೀಮ್ ಆ ಎಲ್ಲಾ ವಿಗ್ರಹಗಳನ್ನು ಧ್ವಂಸ ಮಾಡಿದರು. ಆದರೆ ಅವುಗಳಲ್ಲಿ ದೊಡ್ಡ ವಿಗ್ರಹವನ್ನು ಹಾಗೆಯೇ ಬಿಟ್ಟರು. ಜನರು ಅದರ ಬಳಿಗೆ ಹಿಂದಿರುಗಿ ಬರುವುದಕ್ಕಾಗಿ.

فَجَعَلَهُمۡ جُذَٰذًا إِلَّا كَبِيرٗا لَّهُمۡ لَعَلَّهُمۡ إِلَيۡهِ يَرۡجِعُونَ ﴿٥٨﴾

---

59. ಜನರು ಕೇಳಿದರು: "ನಮ್ಮ ದೇವರುಗಳೊಡನೆ ಇಂತಹ ಕೃತ್ಯವನ್ನು ಮಾಡಿದ್ದು ಯಾರು? ನಿಶ್ಚಯವಾಗಿಯೂ ಅವನು

قَالُواْ مَن فَعَلَ هَٰذَا بِـَٔالِهَتِنَآ إِنَّهُۥ لَمِنَ ٱلظَّٰلِمِينَ ﴿٥٩﴾

ಅಕ್ರಮಿಯಾಗಿದ್ದಾನೆ."

| | | |
|---|---|---|
| 60. | ಕೆಲವರು ಹೇಳಿದರು: "ಇಬ್ರಾಹೀಮ್ ಎಂಬ ಹೆಸರಿನ ಒಬ್ಬ ಯುವಕ ಈ ದೇವರುಗಳ ಬಗ್ಗೆ ಮಾತನಾಡುವುದನ್ನು ನಾವು ಕೇಳಿದ್ದೇವೆ." | قَالُواْ سَمِعۡنَا فَتٗى يَذۡكُرُهُمۡ يُقَالُ لَهُۥٓ إِبۡرَٰهِيمُ ٦٠ |
| 61. | ಜನರು ಹೇಳಿದರು: "ಅವನನ್ನು ಜನರ ಕಣ್ಣ ಮುಂದೆ ತಂದು ನಿಲ್ಲಿಸಿ. ಎಲ್ಲರೂ ಅವನನ್ನು ನೋಡಲಿ." | قَالُواْ فَأۡتُواْ بِهِۦ عَلَىٰٓ أَعۡيُنِ ٱلنَّاسِ لَعَلَّهُمۡ يَشۡهَدُونَ ٦١ |
| 62. | ಅವರು ಕೇಳಿದರು: "ಓ ಇಬ್ರಾಹೀಮ್! ನಮ್ಮ ದೇವರುಗಳೊಂದಿಗೆ ಈ ಕೃತ್ಯವನ್ನು ಮಾಡಿದ್ದು ನೀನೇ ಏನು?" | قَالُوٓاْ ءَأَنتَ فَعَلۡتَ هَٰذَا بِـَٔالِهَتِنَا يَٰٓإِبۡرَٰهِيمُ ٦٢ |
| 63. | ಇಬ್ರಾಹೀಮ್ ಉತ್ತರಿಸಿದರು: "ಅಲ್ಲ; ಈ ದೊಡ್ಡ ವಿಗ್ರಹವೇ ಇದನ್ನು ಮಾಡಿದ್ದು. ನೀವು ಆ (ಧ್ವಂಸವಾದ) ವಿಗ್ರಹಗಳೊಡನೆ ಕೇಳಿ ನೋಡಿ. ಅವುಗಳಿಗೆ ಮಾತನಾಡಲು ಸಾಧ್ಯವಿದ್ದರೆ." | قَالَ بَلۡ فَعَلَهُۥ كَبِيرُهُمۡ هَٰذَا فَسۡـَٔلُوهُمۡ إِن كَانُواْ يَنطِقُونَ ٦٣ |
| 64. | ಅವರು (ಸತ್ಯವನ್ನು ಅರಿತು) ಪರಸ್ಪರರ ಕಡೆಗೆ ತಿರುಗಿ ಹೇಳಿದರು: "ನಿಜವಾಗಿಯೂ ನೀವೇ ಅಕ್ರಮಿಗಳು."[1] | فَرَجَعُوٓاْ إِلَىٰٓ أَنفُسِهِمۡ فَقَالُوٓاْ إِنَّكُمۡ أَنتُمُ ٱلظَّٰلِمُونَ ٦٤ |
| 65. | ನಂತರ ಅವರು ಉಲ್ಟಾ ಹೊಡೆದು ಹೇಳಿದರು: "ಈ ವಿಗ್ರಹಗಳು ಮಾತನಾಡುವುದಿಲ್ಲವೆಂದು ನಿನಗೆ ಗೊತ್ತಿಲ್ಲವೇ?" | ثُمَّ نُكِسُواْ عَلَىٰ رُءُوسِهِمۡ لَقَدۡ عَلِمۡتَ مَا هَٰٓؤُلَآءِ يَنطِقُونَ ٦٥ |
| 66. | ಇಬ್ರಾಹೀಮ್ ಕೇಳಿದರು: "ಹಾಗಾದರೆ ನೀವು ಅಲ್ಲಾಹನನ್ನು ಬಿಟ್ಟು ನಿಮಗೆ ಯಾವುದೇ ಉಪಕಾರ ಅಥವಾ ತೊಂದರೆ ಮಾಡದ ಈ ವಸ್ತುಗಳನ್ನು ಆರಾಧಿಸುತ್ತಿದ್ದೀರಾ? | قَالَ أَفَتَعۡبُدُونَ مِن دُونِ ٱللَّهِ مَا لَا يَنفَعُكُمۡ شَيۡـٔٗا وَلَا يَضُرُّكُمۡ ٦٦ |
| 67. | ನಿಮಗೆ ಮತ್ತು ಅಲ್ಲಾಹನನ್ನು ಬಿಟ್ಟು ನೀವು ಆರಾಧಿಸುತ್ತಿರುವ ಈ ದೇವರುಗಳಿಗೆ ನಾಚಿಕೆಯಾಗಬೇಕು! ನೀವು ಆಲೋಚಿಸುವುದಿಲ್ಲವೇ?"[2] | أُفّٖ لَّكُمۡ وَلِمَا تَعۡبُدُونَ مِن دُونِ ٱللَّهِۚ أَفَلَا تَعۡقِلُونَ ٦٧ |
| 68. | ಜನರು ಹೇಳಿದರು: "ಅವನನ್ನು ಸುಟ್ಟುಬಿಡಿ; ಮತ್ತು ನಿಮ್ಮ ದೇವರುಗಳಿಗೆ ಸಹಾಯ ಮಾಡಿ. ನೀವೇನಾದರೂ ಮಾಡುವುದಿದ್ದರೆ." | قَالُواْ حَرِّقُوهُ وَٱنصُرُوٓاْ ءَالِهَتَكُمۡ إِن كُنتُمۡ فَٰعِلِينَ ٦٨ |
| 69. | ನಾವು ಹೇಳಿದೆವು: "ಓ ಬೆಂಕಿಯೇ! ನೀನು ಇಬ್ರಾಹೀಮರಿಗೆ | قُلۡنَا يَٰنَارُ كُونِي بَرۡدٗا وَسَلَٰمًا عَلَىٰٓ إِبۡرَٰهِيمَ ٦٩ |

[1] ಆ ವಿಗ್ರಹಗಳಿಗೆ ಕೇಳುವುದಿಲ್ಲ; ಅವು ನೋಡುವುದಿಲ್ಲ ಮತ್ತು ಮಾತನಾಡುವುದಿಲ್ಲವೆಂದು ಅವರಿಗೆ ಸ್ಪಷ್ಟವಾಗಿ ತಿಳಿದಿತ್ತು. ದೊಡ್ಡ ವಿಗ್ರಹಕ್ಕೆ ಸಣ್ಣ ವಿಗ್ರಹಗಳನ್ನು ಧ್ವಂಸ ಮಾಡುವ ಶಕ್ತಿ ಇಲ್ಲವೆಂದೂ ಅವರಿಗೆ ತಿಳಿದಿತ್ತು. ಆದರೂ ಅದನ್ನು ಒಪ್ಪಿಕೊಳ್ಳಲು ಅವರು ಸಿದ್ಧರಿರಲಿಲ್ಲ.

[2] ನೀವು ಆರಾಧಿಸುವ ಈ ವಿಗ್ರಹಗಳಿಗೆ ಸ್ವಯಂ ಅವರನ್ನೇ ಕಾಪಾಡಲು ಆಗುವುದಿಲ್ಲ. ಹೀಗಿರುವಾಗ ಅವರು ಪ್ರಪಂಚವನ್ನು ಕಾಪಾಡುತ್ತಾರೆನ್ನುವುದು ಹಾಸ್ಯಾಸ್ಪದ. ಯಾವುದೇ ಉಪಕಾರ ಅಥವಾ ತೊಂದರೆ ಮಾಡದ ಈ ವಸ್ತುಗಳನ್ನು ಏಕೆ ಆರಾಧಿಸುತ್ತಿದ್ದೀರಿ ಎಂದು ಇಬ್ರಾಹೀಂ (ಅವರ ಮೇಲೆ ಶಾಂತಿಯಿರಲಿ) ಅವರೊಡನೆ ಕೇಳುತ್ತಿದ್ದಾರೆ.

ತಂಪು ಮತ್ತು ಸುರಕ್ಷೆಯಾಗಿ ಮಾರ್ಪಡು."

70. ಅವರು ಇಬ್ರಾಹೀಮರ ಮೇಲೆ ತಂತ್ರ ಪ್ರಯೋಗಿಸಲು ಬಯಸಿದ್ದರು. ಆದರೆ ನಾವು ಅವರ (ತಂತ್ರವನ್ನು) ವಿಫಲಗೊಳಿಸಿದೆವು.

وَأَرَادُواْ بِهِۦ كَيۡدٗا فَجَعَلۡنَٰهُمُ ٱلۡأَخۡسَرِينَ ٧٠

71. ನಾವು ಅವರನ್ನು ಮತ್ತು ಲೂತರನ್ನು ಪಾರು ಮಾಡಿ ನಾವು ಸರ್ವಲೋಕದವರಿಗಾಗಿ ಸಮೃದ್ಧಗೊಳಿಸಿದ ಪ್ರದೇಶಕ್ಕೆ ಸಾಗಿಸಿದೆವು.

وَنَجَّيۡنَٰهُ وَلُوطًا إِلَى ٱلۡأَرۡضِ ٱلَّتِي بَٰرَكۡنَا فِيهَا
لِلۡعَٰلَمِينَ ٧١

72. ನಾವು ಅವರಿಗೆ ಇಸ್‌ಹಾಕರನ್ನು ಮತ್ತು ಹೆಚ್ಚಿಗೆಯಾಗಿ ಯಾಕೂಬರನ್ನು ದಯಪಾಲಿಸಿದೆವು. ಅವರೆಲ್ಲರನ್ನೂ ನಾವು ನೀತಿವಂತರನ್ನಾಗಿ ಮಾಡಿದೆವು.

وَوَهَبۡنَا لَهُۥٓ إِسۡحَٰقَ وَيَعۡقُوبَ نَافِلَةٗۖ وَكُلّٗا
جَعَلۡنَا صَٰلِحِينَ ٧٢

73. ನಾವು ಅವರನ್ನು ನಮ್ಮ ಆಜ್ಞೆಯಂತೆ ಮಾರ್ಗದರ್ಶನ ಮಾಡುವ ಮುಖಂಡರನ್ನಾಗಿ ಮಾಡಿದೆವು. ನಾವು ಅವರಿಗೆ ಸತ್ಕರ್ಮಗಳನ್ನು ಮಾಡಲು, ನಮಾಝ್ ಸಂಸ್ಥಾಪಿಸಲು ಮತ್ತು ಝಕಾತ್ ನೀಡಲು ದೇವವಾಣಿಯನ್ನು (ನಿರ್ದೇಶನವನ್ನು) ನೀಡಿದೆವು. ಅವರು ನಮ್ಮನ್ನು ಮಾತ್ರ ಆರಾಧಿಸುವ ದಾಸರಾಗಿದ್ದರು.

وَجَعَلۡنَٰهُمۡ أَئِمَّةٗ يَهۡدُونَ بِأَمۡرِنَا وَأَوۡحَيۡنَآ إِلَيۡهِمۡ
فِعۡلَ ٱلۡخَيۡرَٰتِ وَإِقَامَ ٱلصَّلَوٰةِ وَإِيتَآءَ ٱلزَّكَوٰةِۖ
وَكَانُواْ لَنَا عَٰبِدِينَ ٧٣

74. ನಾವು ಲೂತರಿಗೆ ತೀರ್ಪುಗಾರಿಕೆ ಮತ್ತು ಜ್ಞಾನವನ್ನು ದಯಪಾಲಿಸಿದೆವು. ಅಶ್ಲೀಲಕೃತ್ಯವನ್ನು ಮಾಡುತ್ತಿದ್ದ ಊರಿನಿಂದ ನಾವು ಅವರನ್ನು ಪಾರು ಮಾಡಿದೆವು. ನಿಶ್ಚಯವಾಗಿಯೂ ಆ ಊರಿನವರು ದುಷ್ಟ ಅವಿಧೇಯ ಜನರಾಗಿದ್ದರು.

وَلُوطًا ءَاتَيۡنَٰهُ حُكۡمٗا وَعِلۡمٗا وَنَجَّيۡنَٰهُ مِنَ
ٱلۡقَرۡيَةِ ٱلَّتِي كَانَت تَّعۡمَلُ ٱلۡخَبَٰٓئِثَۚ إِنَّهُمۡ كَانُواْ
قَوۡمَ سَوۡءٖ فَٰسِقِينَ ٧٤

75. ನಾವು ಅವರನ್ನು (ಲೂತ್‌ರನ್ನು) ನಮ್ಮ ದಯೆಯಲ್ಲಿ ಸೇರಿಸಿದೆವು. ನಿಶ್ಚಯವಾಗಿಯೂ ಅವರು ನೀತಿವಂತರಲ್ಲಿ ಸೇರಿದ್ದರು.

وَأَدۡخَلۡنَٰهُ فِي رَحۡمَتِنَآۖ إِنَّهُۥ مِنَ ٱلصَّٰلِحِينَ ٧٥

76. ನೂಹರನ್ನು ಕೂಡ ನೆನಪಿಸಿಕೊಳ್ಳಿ! ಇದಕ್ಕೆ ಮೊದಲು ಅವರು ನಮ್ಮನ್ನು ಕರೆದು ಪ್ರಾರ್ಥಿಸಿದ ಸಂದರ್ಭದಲ್ಲಿ ನಾವು ಅವರ ಕರೆಗೆ ಉತ್ತರಿಸಿದೆವು. ನಂತರ ನಾವು ಅವರನ್ನು ಮತ್ತು ಅವರ ಕುಟುಂಬವನ್ನು ಮಹಾ ದುರಂತದಿಂದ ಪಾರು ಮಾಡಿದೆವು.

وَنُوحًا إِذۡ نَادَىٰ مِن قَبۡلُ فَٱسۡتَجَبۡنَا لَهُۥ
فَنَجَّيۡنَٰهُ وَأَهۡلَهُۥ مِنَ ٱلۡكَرۡبِ ٱلۡعَظِيمِ ٧٦

77. ನಮ್ಮ ವಚನಗಳನ್ನು ನಿಷೇಧಿಸಿದ ಜನರ ವಿರುದ್ಧ ನಾವು ಅವರಿಗೆ (ನೂಹರಿಗೆ) ಸಹಾಯ ಮಾಡಿದೆವು. ನಿಶ್ಚಯವಾಗಿಯೂ ಅವರು ದುಷ್ಟ ಜನರಾಗಿದ್ದರು. ಆದ್ದರಿಂದ ನಾವು ಅವರೆಲ್ಲರನ್ನೂ ಮುಳುಗಿಸಿ ಕೊಂದೆವು.

وَنَصَرۡنَٰهُ مِنَ ٱلۡقَوۡمِ ٱلَّذِينَ كَذَّبُواْ بِـَٔايَٰتِنَآۚ إِنَّهُمۡ
كَانُواْ قَوۡمَ سَوۡءٖ فَأَغۡرَقۡنَٰهُمۡ أَجۡمَعِينَ ٧٧

78. ದಾವೂದ್ ಮತ್ತು ಸುಲೈಮಾನರನ್ನು ನೆನಪಿಸಿಕೊಳ್ಳಿ! ಅವರಿಬ್ಬರು

وَدَاوُۥدَ وَسُلَيۡمَٰنَ إِذۡ يَحۡكُمَانِ فِي ٱلۡحَرۡثِ

ಒಂದು ಹೊಲದ ವಿಷಯದಲ್ಲಿ ತೀರ್ಪು ನೀಡುತ್ತಿದ್ದರು. ಆ ಹೊಲಕ್ಕೆ ಕೆಲವು ಜನರ ಕುರಿಗಳು ನುಸುಳಿದ್ದವು. ಅವರು ನೀಡುವ ತೀರ್ಪಿಗೆ ನಾವು ಸಾಕ್ಷಿಯಾಗಿದ್ದೆವು.

إِذۡ نَفَشَتۡ فِيهِ غَنَمُ ٱلۡقَوۡمِ وَكُنَّا لِحُكۡمِهِمۡ شَٰهِدِينَ ٧٨

---

79. ನಾವು ಸುಲೈಮಾನರಿಗೆ ಈ ಪ್ರಕರಣವು ಸರಿಯಾಗಿ ಅರ್ಥವಾಗುವಂತೆ ಮಾಡಿದೆವು.[1] ಅವರಿಬ್ಬರಿಗೂ ನಾವು ತೀರ್ಪುಗಾರಿಕೆ ಮತ್ತು ಜ್ಞಾನವನ್ನು ನೀಡಿದ್ದೆವು. ದಾವೂದರೊಂದಿಗೆ ಸ್ತುತಿಕೀರ್ತನೆ ಮಾಡಲು ನಾವು ಪರ್ವತಗಳನ್ನು ಮತ್ತು ಪಕ್ಷಿಗಳನ್ನು ಅವರಿಗೆ ಅಧೀನಗೊಳಿಸಿದೆವು. ನಾವು (ಅದನ್ನೆಲ್ಲಾ) ಮಾಡುವವರಾಗಿದ್ದೆವು.

فَفَهَّمۡنَٰهَا سُلَيۡمَٰنَۚ وَكُلًّا ءَاتَيۡنَا حُكۡمٗا وَعِلۡمٗاۚ وَسَخَّرۡنَا مَعَ دَاوُۥدَ ٱلۡجِبَالَ يُسَبِّحۡنَ وَٱلطَّيۡرَۚ وَكُنَّا فَٰعِلِينَ ٧٩

---

80. ಯುದ್ಧದಲ್ಲಿ (ವೈರಿಗಳ ಏಟುಗಳಿಂದ) ನಿಮಗೆ ರಕ್ಷಣೆ ಒದಗಿಸುವ ಅಂಗಿಗಳ ತಯಾರಿಕೆಯನ್ನು ನಾವು ದಾವೂದರಿಗೆ ಕಲಿಸಿಕೊಟ್ಟೆವು.[2] ಆದರೂ ನೀವು ಕೃತಜ್ಞರಾಗುವುದಿಲ್ಲವೇ?

وَعَلَّمۡنَٰهُ صَنۡعَةَ لَبُوسٖ لَّكُمۡ لِتُحۡصِنَكُم مِّنۢ بَأۡسِكُمۡۖ فَهَلۡ أَنتُمۡ شَٰكِرُونَ ٨٠

---

81. ನಾವು ಸುಲೈಮಾನರಿಗೆ ಬಲವಾಗಿ ಬೀಸುವ ಗಾಳಿಯನ್ನು ಅಧೀನಗೊಳಿಸಿದೆವು. ಅದು ಅವರ ಆಜ್ಞೆಯಂತೆ ನಾವು ಸಮೃದ್ಧಗೊಳಿಸಿದ ಭೂಪ್ರದೇಶಕ್ಕೆ ಚಲಿಸುತ್ತಿತ್ತು.[3] ನಾವು ಎಲ್ಲಾ ವಿಷಯಗಳ ಬಗ್ಗೆಯೂ ಜ್ಞಾನವುಳ್ಳವರಾಗಿದ್ದೇವೆ.

وَلِسُلَيۡمَٰنَ ٱلرِّيحَ عَاصِفَةٗ تَجۡرِي بِأَمۡرِهِۦٓ إِلَى ٱلۡأَرۡضِ ٱلَّتِي بَٰرَكۡنَا فِيهَاۚ وَكُنَّا بِكُلِّ شَيۡءٍ عَٰلِمِينَ ٨١

---

82. ಶೈತಾನರಲ್ಲಿ ಕೆಲವರನ್ನು ಅವರಿಗೆ ಅಧೀನಗೊಳಿಸಿದೆವು. ಅವರು ಸುಲೈಮಾನರಿಗಾಗಿ ಸಮುದ್ರದಲ್ಲಿ ಮುಳುಗುತ್ತಿದ್ದರು. ಇದಲ್ಲದೆ ಇನ್ನಿತರ ಅನೇಕ ಕೆಲಸಗಳನ್ನು ಅವರು ಮಾಡುತ್ತಿದ್ದರು. ನಾವು ಅವರೆಲ್ಲರ ಪಾಲಕರಾಗಿದ್ದೆವು.

وَمِنَ ٱلشَّيَٰطِينِ مَن يَغُوصُونَ لَهُۥ وَيَعۡمَلُونَ عَمَلٗا دُونَ ذَٰلِكَۖ وَكُنَّا لَهُمۡ حَٰفِظِينَ ٨٢

---

83. ಅಯ್ಯೂಬರನ್ನು ಕೂಡ ನೆನಪಿಸಿಕೊಳ್ಳಿ! ಅವರು ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಕರೆದು ಪ್ರಾರ್ಥಿಸಿದ ಸಂದರ್ಭ.

وَأَيُّوبَ إِذۡ نَادَىٰ رَبَّهُۥٓ أَنِّي مَسَّنِيَ ٱلضُّرُّ وَأَنتَ

---

[1] ಒಬ್ಬ ವ್ಯಕ್ತಿಯ ಹೊಲಕ್ಕೆ ಇನ್ನೊಬ್ಬ ವ್ಯಕ್ತಿಯ ಮೇಕೆಗಳು ಹೊಕ್ಕು ಅಲ್ಲಿದ್ದ ಬೆಳೆಗಳನ್ನೆಲ್ಲಾ ನಾಶ ಮಾಡಿದ್ದವು. ಈ ಪ್ರಕರಣದ ಬಗ್ಗೆ ದಾವೂದರಿಗೆ (ಅವರ ಮೇಲೆ ಶಾಂತಿಯಿರಲಿ) ದೂರು ಬಂದಾಗ, ಮೇಕೆಗಳ ಯಜಮಾನ ಮೇಕೆಗಳನ್ನು ಬೆಳೆಗಳನ್ನು ನಾಶ ಮಾಡಿದ್ದಕ್ಕೆ ಪರಿಹಾರವಾಗಿ ಹೊಲದ ಯಜಮಾನನಿಗೆ ನೀಡಬೇಕೆಂದು ಅವರು ತೀರ್ಪು ನೀಡಿದರು. ಆದರೆ ಸುಲೈಮಾನರು (ಅವರ ಮೇಲೆ ಶಾಂತಿಯಿರಲಿ) ನೀಡಿದ ತೀರ್ಪು ಬೇರೆ ರೀತಿಯಲ್ಲಿತ್ತು. ಒಂದು ಅವಧಿಯವರೆಗೆ ಮೇಕೆಗಳ ಯಜಮಾನ ಮೇಕೆಗಳನ್ನು ಹೊಲದ ಯಜಮಾನನಿಗೆ ಮತ್ತು ಹೊಲದ ಯಜಮಾನ ಹೊಲವನ್ನು ಮೇಕೆಗಳ ಯಜಮಾನನಿಗೆ ಕೊಡಬೇಕು. ಆ ಅವಧಿಯ ತನಕ ಹೊಲದ ಯಜಮಾನ ಮೇಕೆಗಳಿಂದ ಉಪಯೋಗ ಪಡೆಯಬೇಕು. ಅಷ್ಟರಲ್ಲಿ ಮೇಕೆಗಳ ಯಜಮಾನ ಹೊಲವನ್ನು ದುರಸ್ತಿಗೊಳಿಸಿ ಮೊದಲು ಹೇಗಿತ್ತೋ ಅದೇ ರೀತಿಯಲ್ಲಿ ಮರಳಿಸಬೇಕು. ಇದರಿಂದ ಹೊಲದ ಯಜಮಾನನಿಗೆ ಅಥವಾ ಮೇಕೆಗಳ ಯಜಮಾನನಿಗೆ ನಷ್ಟವಿಲ್ಲ. ಹೊಲವೂ ದುರಸ್ತಿಯಾಗುತ್ತದೆ, ಮೇಕೆಗಳೂ ಮರಳಿ ಸಿಗುತ್ತವೆ.

[2] ಅಲ್ಲಾಹು ದಾವೂದರಿಗೆ (ಅವರ ಮೇಲೆ ಶಾಂತಿಯಿರಲಿ) ಕಬ್ಬಿಣವನ್ನು ಮೃದುಗೊಳಿಸಿ ಕೊಟ್ಟಿದ್ದನು.

[3] ಸುಲೈಮಾನರು (ಅವರ ಮೇಲೆ ಶಾಂತಿಯಿರಲಿ) ಹೇಳಿದ ಕಡೆಗೆ ಗಾಳಿ ಚಲಿಸುತ್ತಿತ್ತು. ಅವರು ಮತ್ತು ಅವರ ಆಸ್ಥಾನ ಮುಖಂಡರು ಆಸನಗಳಲ್ಲಿ ಕುಳಿತುಕೊಳ್ಳುತ್ತಿದ್ದರು. ಆ ಆಸನಗಳನ್ನು ಗಾಳಿಯು ಅವರು ಬಯಸುವ ಕಡೆಗೆ ಒಯ್ಯುತ್ತಿತ್ತು. ತಿಂಗಳುಗಳ ಕಾಲದ ದೂರವನ್ನು ಅವರು ಕೆಲವೇ ಕ್ಷಣಗಳಲ್ಲಿ ತಲುಪುತ್ತಿದ್ದರು.

أَرۡحَمُ ٱلرَّٰحِمِينَ ٨٣

“ನಿಶ್ಚಯವಾಗಿಯೂ ನನಗೆ ತೊಂದರೆ ತಗುಲಿದೆ. ನೀನಾದರೋ ದಯೆ ತೋರುವವರಲ್ಲೇ ಅತ್ಯಧಿಕ ದಯೆ ತೋರುವವನು.”

---

فَٱسۡتَجَبۡنَا لَهُۥ فَكَشَفۡنَا مَا بِهِۦ مِن ضُرّٖۖ وَءَاتَيۡنَٰهُ أَهۡلَهُۥ وَمِثۡلَهُم مَّعَهُمۡ رَحۡمَةٗ مِّنۡ عِندِنَا وَذِكۡرَىٰ لِلۡعَٰبِدِينَ ٨٤

84. ಆಗ ನಾವು ಅವರ ಕರೆಗೆ ಉತ್ತರ ನೀಡಿ ಅವರು ಬಳಲುತ್ತಿದ್ದ ತೊಂದರೆಯನ್ನು ನಿವಾರಿಸಿದೆವು. ನಾವು ಅವರಿಗೆ ಅವರ ಕುಟುಂಬವನ್ನು ಮತ್ತು ಅವರೊಂದಿಗೆ ಅವರಷ್ಟೇ ಇತರರನ್ನು ನೀಡಿದೆವು. ಇದು ನಮ್ಮ ಕಡೆಯ ದಯೆಯಾಗಿದೆ ಮತ್ತು ಆರಾಧಕರಿಗೆ ಒಂದು ಉಪದೇಶವಾಗಿದೆ.

---

وَإِسۡمَٰعِيلَ وَإِدۡرِيسَ وَذَا ٱلۡكِفۡلِۖ كُلّٞ مِّنَ ٱلصَّٰبِرِينَ ٨٥

85. ಇಸ್ಮಾಈಲ್, ಇದ್ರೀಸ್ ಮತ್ತು ದುಲ್-ಕಿಫ್ಲರನ್ನು ಕೂಡ ನೆನಪಿಸಿಕೊಳ್ಳಿ! ಅವರೆಲ್ಲರೂ ತಾಳ್ಮೆಯುಳ್ಳವರಾಗಿದ್ದರು.

---

وَأَدۡخَلۡنَٰهُمۡ فِي رَحۡمَتِنَآۖ إِنَّهُم مِّنَ ٱلصَّٰلِحِينَ ٨٦

86. ನಾವು ಅವರನ್ನು ನಮ್ಮ ಕಾರುಣ್ಯದಲ್ಲಿ ಸೇರಿಸಿದೆವು. ನಿಶ್ಚಯವಾಗಿಯೂ ಅವರು ಸಜ್ಜನರಲ್ಲಿ ಸೇರಿದವರಾಗಿರುವರು.

---

وَذَا ٱلنُّونِ إِذ ذَّهَبَ مُغَٰضِبٗا فَظَنَّ أَن لَّن نَّقۡدِرَ عَلَيۡهِ فَنَادَىٰ فِي ٱلظُّلُمَٰتِ أَن لَّآ إِلَٰهَ إِلَّآ أَنتَ سُبۡحَٰنَكَ إِنِّي كُنتُ مِنَ ٱلظَّٰلِمِينَ ٨٧

87. ದುನ್ನೂನರನ್ನು[1] (ಯೂನುಸ್) ಕೂಡ ನೆನಪಿಸಿಕೊಳ್ಳಿ! ಅವರು ಕೋಪದಿಂದ ಹೊರಟುಹೋದ ಸಂದರ್ಭ. ನಮಗೆ ಅವರನ್ನು ಹಿಡಿಯಲು ಸಾಧ್ಯವಿಲ್ಲವೆಂದು ಅವರು ಭಾವಿಸಿದ್ದರು. ನಂತರ ಅವರು ಅಂಧಕಾರಗಳ ಒಳಗಿನಿಂದ ಕೂಗಿ ಕರೆದರು: “ನಿನ್ನ ಹೊರತು ಆರಾಧನೆಗೆ ಅರ್ಹರಾದ ಬೇರೆ ದೇವನಿಲ್ಲ. ನೀನು ಪರಿಶುದ್ಧನು! ನಿಶ್ಚಯವಾಗಿಯೂ ನಾನು ಅಕ್ರಮಿಗಳಲ್ಲಿ ಸೇರಿದ್ದೆ.”

---

فَٱسۡتَجَبۡنَا لَهُۥ وَنَجَّيۡنَٰهُ مِنَ ٱلۡغَمِّۚ وَكَذَٰلِكَ نُـۨجِي ٱلۡمُؤۡمِنِينَ ٨٨

88. ಆಗ ನಾವು ಅವರ ಕರೆಗೆ ಉತ್ತರ ನೀಡಿದೆವು ಮತ್ತು ಅವರನ್ನು ಆ ಸಂಕಟದಿಂದ ಪಾರು ಮಾಡಿದೆವು. ನಾವು ಇದೇ ರೀತಿ ಸತ್ಯವಿಶ್ವಾಸಿಗಳನ್ನು ಪಾರು ಮಾಡುತ್ತೇವೆ.

---

وَزَكَرِيَّآ إِذۡ نَادَىٰ رَبَّهُۥ رَبِّ لَا تَذَرۡنِي فَرۡدٗا وَأَنتَ خَيۡرُ ٱلۡوَٰرِثِينَ ٨٩

89. ಝಕರಿಯ್ಯರನ್ನು ಕೂಡ ನೆನಪಿಸಿಕೊಳ್ಳಿ! ಅವರು ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಕರೆದು ಪ್ರಾರ್ಥಿಸಿದ ಸಂದರ್ಭ: “ಓ ನನ್ನ ಪರಿಪಾಲಕನೇ! ನನ್ನನ್ನು ಒಂಟಿಯಾಗಿ ಬಿಟ್ಟುಬಿಡಬೇಡ. ನೀನು ಅತ್ಯುತ್ತಮ ವಾರಸುದಾರನಾಗಿರುವೆ.”

---

فَٱسۡتَجَبۡنَا لَهُۥ وَوَهَبۡنَا لَهُۥ يَحۡيَىٰ وَأَصۡلَحۡنَا لَهُۥ زَوۡجَهُۥٓۚ إِنَّهُمۡ كَانُواْ يُسَٰرِعُونَ فِي ٱلۡخَيۡرَٰتِ وَيَدۡعُونَنَا رَغَبٗا وَرَهَبٗاۖ وَكَانُواْ لَنَا خَٰشِعِينَ ٩٠

90. ಆಗ ನಾವು ಅವರ ಕರೆಗೆ ಉತ್ತರ ನೀಡಿದೆವು. ಅವರಿಗೆ ಯಹ್ಯಾ ಎಂಬ ಪುತ್ರನನ್ನು ದಯಪಾಲಿಸಿದೆವು. ಅವರ ಪತ್ನಿಯನ್ನು (ಗರ್ಭಧಾರಣೆಗೆ) ಯೋಗ್ಯಳನ್ನಾಗಿಸಿದೆವು. ನಿಶ್ಚಯವಾಗಿಯೂ ಈ ಎಲ್ಲಾ ಪ್ರವಾದಿಗಳು ಸತ್ಕರ್ಮಗಳನ್ನು ಮಾಡಲು ತ್ವರೆ

---

[1] ದನ್ನೂನ್ ಎಂದರೆ ಮೀನಿನವನು ಎಂದರ್ಥ. ಪ್ರವಾದಿ ಯೂನುಸ್ (ಅವರ ಮೇಲೆ ಶಾಂತಿಯಿರಲಿ) ಕೋಪದಿಂದ ಊರು ಬಿಟ್ಟು ಹೊರಟು ಒಂದು ನಾವೆಯನ್ನೇರಿದರು. ನಾವೆಯಿಂದ ಹೊರಗೆಸೆಯಲಾದ ಯೂನುಸ್‌ರನ್ನು (ಅವರ ಮೇಲೆ ಶಾಂತಿಯಿರಲಿ) ಒಂದು ದೊಡ್ಡ ಮೀನು ನುಂಗಿತು. ಮೀನಿನ ಹೊಟ್ಟೆ ಸೇರಿದ ಅವರು ಆ ಕತ್ತಲೆಯಲ್ಲಿ ಅಲ್ಲಾಹನನ್ನು ಕರೆದು ಪ್ರಾರ್ಥಿಸಿದಾಗ ಅಲ್ಲಾಹು ಅವರನ್ನು ಅದರಿಂದ ರಕ್ಷಿಸಿದನು.

ಮಾಡುತ್ತಿದ್ದರು ಮತ್ತು ನಿರೀಕ್ಷೆ ಹಾಗೂ ಭಯದಿಂದ ನಮ್ಮನ್ನು
ಕರೆದು ಪ್ರಾರ್ಥಿಸುತ್ತಿದ್ದರು. ಅವರು ನಮಗೆ ವಿನಮ್ರರಾಗಿದ್ದರು.

---

91. ತನ್ನ ಕನ್ಯತ್ವವನ್ನು ಸಂರಕ್ಷಿಸಿದ ಆ ಪರಿಶುದ್ಧ ಮಹಿಳೆಯನ್ನು
(ಮರ್ಯಮರನ್ನು) ಕೂಡ ನೆನಪಿಸಿಕೊಳ್ಳಿ, ನಾವು ಅವರೊಳಗೆ
ಆತ್ಮವನ್ನು ಊದಿದೆವು. ಅವರನ್ನು ಮತ್ತು ಅವರ ಪುತ್ರನನ್ನು
ಸರ್ವಲೋಕದವರಿಗೆ ದೃಷ್ಟಾಂತವೆಂಬಂತೆ ಮಾಡಿದೆವು.

وَٱلَّتِيٓ أَحۡصَنَتۡ فَرۡجَهَا فَنَفَخۡنَا فِيهَا مِن
رُّوحِنَا وَجَعَلۡنَٰهَا وَٱبۡنَهَآ ءَايَةٗ لِّلۡعَٰلَمِينَ ٩١

---

92. ನಿಶ್ಚಯವಾಗಿಯೂ, ಇದೇ ನಿಮ್ಮ ಸಮುದಾಯ. ಏಕೈಕ
ಸಮುದಾಯ! ಮತ್ತು ನಾನೇ ನಿಮ್ಮ ಪರಿಪಾಲಕ. ಆದ್ದರಿಂದ
ನನ್ನನ್ನು ಮಾತ್ರ ಆರಾಧಿಸಿರಿ.

إِنَّ هَٰذِهِۦٓ أُمَّتُكُمۡ أُمَّةٗ وَٰحِدَةٗ وَأَنَا۠ رَبُّكُمۡ
فَٱعۡبُدُونِ ٩٢

---

93. ಆದರೆ ಜನರು ತಮ್ಮ ಧರ್ಮದ ವಿಷಯದಲ್ಲಿ ಒಡೆದು
ಭಿನ್ನರಾದರು. ಎಲ್ಲರೂ ನಮ್ಮ ಬಳಿಗೆ ಮರಳಿ ಬರುವವರು.

وَتَقَطَّعُوٓاْ أَمۡرَهُم بَيۡنَهُمۡۖ كُلٌّ إِلَيۡنَا رَٰجِعُونَ ٩٣

---

94. ಯಾರು ಸತ್ಯವಿಶ್ವಾಸಿಯಾಗಿದ್ದು ಸತ್ಕರ್ಮಗಳನ್ನು ಮಾಡುತ್ತಾನೋ,
ಅವನ ಪರಿಶ್ರಮಗಳನ್ನು ನಿರಾಕರಿಸಲಾಗುವುದಿಲ್ಲ.
ನಿಶ್ಚಯವಾಗಿಯೂ ನಾವು ಅವುಗಳನ್ನು ದಾಖಲಿಸಿಡುವೆವು.

فَمَن يَعۡمَلۡ مِنَ ٱلصَّٰلِحَٰتِ وَهُوَ مُؤۡمِنٞ فَلَا
كُفۡرَانَ لِسَعۡيِهِۦ وَإِنَّا لَهُۥ كَٰتِبُونَ ٩٤

---

95. ನಾವು ಯಾವೆಲ್ಲಾ ಊರುಗಳನ್ನು ನಾಶ ಮಾಡಿದ್ದೇವೆಯೋ
ಅವುಗಳ ನಿವಾಸಿಗಳು (ಭೂಮಿಗೆ) ಮರಳಿ ಬರುವುದಿಲ್ಲ
ಎಂಬುದು ಅನಿಷೇಧ್ಯ ಸತ್ಯವಾಗಿದೆ.

وَحَرَٰمٌ عَلَىٰ قَرۡيَةٍ أَهۡلَكۡنَٰهَآ أَنَّهُمۡ
لَا يَرۡجِعُونَ ٩٥

---

96. ಎಲ್ಲಿಯವರೆಗೆಂದರೆ, ಯಾಜೂಜ್-ಮಾಜೂಜರನ್ನು ತೆರೆದು
ಬಿಡಲಾಗುವುದು ಮತ್ತು ಅವರು ಎಲ್ಲ ದಿಬ್ಬಗಳಿಂದಲೂ ಇಳಿದು
ಬರುವರು.

حَتَّىٰٓ إِذَا فُتِحَتۡ يَأۡجُوجُ وَمَأۡجُوجُ وَهُم مِّن
كُلِّ حَدَبٖ يَنسِلُونَ ٩٦

---

97. ಆ ಸತ್ಯ ವಾಗ್ದಾನವು ಸಮೀಪಿಸಿದಾಗ ಸತ್ಯನಿಷೇಧಿಗಳ ದೃಷ್ಟಿಗಳು
ಎವೆಯಿಕ್ಕದೆ ದಿಟ್ಟಿಸುತ್ತಿರುವುದು. (ಅವರು ಹೇಳುವರು):
"ಅಯ್ಯೋ! ನಮ್ಮ ದುರ್ಗತಿಯೇ! ನಾವು ಇದರ ಬಗ್ಗೆ ಸಂಪೂರ್ಣ
ನಿರ್ಲಕ್ಷ್ಯದಲ್ಲಿದ್ದೆವು. ಅಲ್ಲ, ನಾವು ಅಕ್ರಮಿಗಳಾಗಿದ್ದೆವು."

وَٱقۡتَرَبَ ٱلۡوَعۡدُ ٱلۡحَقُّ فَإِذَا هِيَ شَٰخِصَةٌ أَبۡصَٰرُ
ٱلَّذِينَ كَفَرُواْ يَٰوَيۡلَنَا قَدۡ كُنَّا فِي غَفۡلَةٖ مِّنۡ
هَٰذَا بَلۡ كُنَّا ظَٰلِمِينَ ٩٧

---

98. ನಿಶ್ಚಯವಾಗಿಯೂ, ನೀವು ಮತ್ತು ಅಲ್ಲಾಹನನ್ನು ಬಿಟ್ಟು ನೀವು
ಆರಾಧಿಸುವ ದೇವರುಗಳು ನರಕದ ಇಂಧನವಾಗಲಿದ್ದಾರೆ.
ನೀವೆಲ್ಲರೂ ಅದಕ್ಕೇ ಹೋಗಿ ಸೇರುವಿರಿ.

إِنَّكُمۡ وَمَا تَعۡبُدُونَ مِن دُونِ ٱللَّهِ حَصَبُ
جَهَنَّمَ أَنتُمۡ لَهَا وَٰرِدُونَ ٩٨

---

99. ಇವರು ನಿಜಕ್ಕೂ ದೇವರುಗಳಾಗಿದ್ದರೆ ಇವರು ನರಕಕ್ಕೆ
ಹೋಗುತ್ತಿರಲಿಲ್ಲ. ಎಲ್ಲರೂ ಅದರಲ್ಲೇ ಶಾಶ್ವತವಾಗಿರುವರು.

لَوۡ كَانَ هَٰٓؤُلَآءِ ءَالِهَةٗ مَّا وَرَدُوهَاۖ وَكُلّٞ فِيهَا
خَٰلِدُونَ ٩٩

---

100. ಅಲ್ಲಿ ಅವರು ದೀರ್ಘ ನಿಟ್ಟುಸಿರುಗಳನ್ನು ಬಿಡುವರು. ಅದರಲ್ಲಿ

لَهُمۡ فِيهَا زَفِيرٞ وَهُمۡ فِيهَا لَا يَسۡمَعُونَ ١٠٠

ಅವರಿಗೆ ಏನೂ ಕೇಳಿಸಲಾರದು.

101. ನಿಶ್ಚಯವಾಗಿಯೂ, ನಮ್ಮ ಕಡೆಯಿಂದ ಯಾರಿಗೆ ಒಳಿತನ್ನು ಮೊದಲೇ ನೀಡಲಾಗಿದೆಯೋ ಅವರನ್ನು ಅದರಿಂದ (ನರಕದಿಂದ) ದೂರವಿರಿಸಲಾಗುವುದು.[1]

إِنَّ ٱلَّذِينَ سَبَقَتۡ لَهُم مِّنَّا ٱلۡحُسۡنَىٰٓ أُوْلَٰٓئِكَ عَنۡهَا مُبۡعَدُونَ ١٠١

102. ಅವರಿಗೆ ನರಕದ ಕಿರಿಚಾಟಗಳು ಕೇಳುವುದಿಲ್ಲ. ಅವರ ಮನಸ್ಸುಗಳು ಅಸೆಪಡುವ ಸುಖಗಳಲ್ಲಿ ಅವರು ಸದಾಕಾಲ ವಾಸಿಸುವರು.

لَا يَسۡمَعُونَ حَسِيسَهَاۖ وَهُمۡ فِي مَا ٱشۡتَهَتۡ أَنفُسُهُمۡ خَٰلِدُونَ ١٠٢

103. ಆ ಮಹಾ ದಿಗಿಲಿನಿಂದಲೂ ಅವರು ಸಂಕಟಪಡಲಾರರು. ದೇವದೂತರುಗಳು ಅವರನ್ನು ಬರಮಾಡಿಕೊಳ್ಳುತ್ತಾ ಹೇಳುವರು: “ಇದು ನಿಮಗೆ ವಾಗ್ದಾನ ಮಾಡಲಾದ ನಿಮ್ಮ ದಿನವಾಗಿದೆ.”

لَا يَحۡزُنُهُمُ ٱلۡفَزَعُ ٱلۡأَكۡبَرُ وَتَتَلَقَّىٰهُمُ ٱلۡمَلَٰٓئِكَةُ هَٰذَا يَوۡمُكُمُ ٱلَّذِي كُنتُمۡ تُوعَدُونَ ١٠٣

104. ಪುಸ್ತಕದ ಹಾಳೆಗಳನ್ನು ಸುರುಳಿಯಾಗಿ ಸುತ್ತುವಂತೆ ನಾವು ಆಕಾಶವನ್ನು ಸುತ್ತುವ ದಿನ. ನಾವು ಪ್ರಥಮ ಬಾರಿ ಸೃಷ್ಟಿಸಿದಂತೆ ಮತ್ತೊಮ್ಮೆ ಸೃಷ್ಟಿಸುವೆವು. ಅದು ನಾವು ನೆರವೇರಿಸಬೇಕಾದ ವಾಗ್ದಾನವಾಗಿದೆ. ನಿಶ್ಚಯವಾಗಿಯೂ ನಾವು ಅದನ್ನು ನೆರವೇರಿಸುತ್ತೇವೆ.

يَوۡمَ نَطۡوِي ٱلسَّمَآءَ كَطَيِّ ٱلسِّجِلِّ لِلۡكُتُبِۚ كَمَا بَدَأۡنَآ أَوَّلَ خَلۡقٖ نُّعِيدُهُۥۚ وَعۡدًا عَلَيۡنَآۚ إِنَّا كُنَّا فَٰعِلِينَ ١٠٤

105. ನಿಶ್ಚಯವಾಗಿಯೂ ನೀತಿವಂತರಾದ ನನ್ನ ದಾಸರೇ ಭೂಮಿಯ ವಾರಸುದಾರರಾಗುವರು ಎಂದು ನಾವು ಝಬೂರ್‌ನಲ್ಲಿ ಉಪದೇಶದ ನಂತರ ದಾಖಲಿಸಿದ್ದೇವೆ.

وَلَقَدۡ كَتَبۡنَا فِي ٱلزَّبُورِ مِنۢ بَعۡدِ ٱلذِّكۡرِ أَنَّ ٱلۡأَرۡضَ يَرِثُهَا عِبَادِيَ ٱلصَّٰلِحُونَ ١٠٥

106. ನಿಶ್ಚಯವಾಗಿಯೂ ಇದರಲ್ಲಿ ಆರಾಧನೆ ಮಾಡುವವರಿಗೆ ದೊಡ್ಡ ಸಂದೇಶವಿದೆ.

إِنَّ فِي هَٰذَا لَبَلَٰغٗا لِّقَوۡمٍ عَٰبِدِينَ ١٠٦

107. (ಪ್ರವಾದಿಯವರೇ) ನಾವು ನಿಮ್ಮನ್ನು ಸರ್ವಲೋಕದವರಿಗೆ ಒಂದು ದಯೆಯಾಗಿಯೇ ಕಳುಹಿಸಿದ್ದೇವೆ.

وَمَآ أَرۡسَلۡنَٰكَ إِلَّا رَحۡمَةٗ لِّلۡعَٰلَمِينَ ١٠٧

108. ಹೇಳಿರಿ: “ನಿಮ್ಮ ದೇವನು ಏಕೈಕ ದೇವನೆಂದು ನನಗೆ ದೇವವಾಣಿ ನೀಡಲಾಗುತ್ತಿದೆ. ಇನ್ನಾದರೂ ನೀವು ಮುಸ್ಲಿಮರಾಗುವಿರಾ?”

قُلۡ إِنَّمَا يُوحَىٰٓ إِلَيَّ أَنَّمَآ إِلَٰهُكُمۡ إِلَٰهٞ وَٰحِدٞۖ فَهَلۡ أَنتُم مُّسۡلِمُونَ ١٠٨

109. ಅವರೇನಾದರೂ ಮುಖ ತಿರುಗಿಸಿ ನಡೆದರೆ ಹೇಳಿರಿ: “ನಾನು ನಿಮಗೆ ಸಮಾನ ರೂಪದಲ್ಲಿ ಎಚ್ಚರಿಸಿದ್ದೇನೆ.[2] ನಿಮಗೆ ವಾಗ್ದಾನ

فَإِن تَوَلَّوۡاْ فَقُلۡ ءَاذَنتُكُمۡ عَلَىٰ سَوَآءٖۖ وَإِنۡ أَدۡرِيٓ أَقَرِيبٌ أَم بَعِيدٞ مَّا تُوعَدُونَ ١٠٩

---

[1] ಜನರು ಆರಾಧಿಸುತ್ತಿರುವ ದೇವರುಗಳಲ್ಲಿ ಪ್ರವಾದಿಗಳು, ದೇವದೂತರುಗಳು ಮತ್ತು ಮಹಾಪುರುಷರು ಕೂಡ ಒಳಪಡುವುದರಿಂದ ಇವರು ಕೂಡ ಅವರೊಡನೆ ನರಕಕ್ಕೆ ಹೋಗುವರೇ? ಎಂಬ ಸಂಶಯ ಉದ್ಭವವಾಗುತ್ತದೆ. ಇದಕ್ಕೆ ಈ ವಚನದಲ್ಲಿ ಉತ್ತರ ನೀಡಲಾಗಿದೆ. ಅಂದರೆ, ಅವರು ನರಕಕ್ಕೆ ಹೋಗುವುದಿಲ್ಲ. ಏಕೆಂದರೆ ಅವರು ಅಲ್ಲಾಹನ ನಿಷ್ಠ ದಾಸರು. ಅವನನ್ನು ಮಾತ್ರ ಆರಾಧಿಸುವವರು. ಜನರು ಅವರನ್ನು ಆರಾಧಿಸುತ್ತಿರುವುದು ಅವರ ಒಪ್ಪಿಗೆಯಿಂದಲ್ಲ; ಬದಲಾಗಿ, ಅವರ ಇಚ್ಛೆಗೆ ವಿರುದ್ಧವಾಗಿ ಜನರು ಅವರನ್ನು ಆರಾಧಿಸುತ್ತಿದ್ದಾರೆ.

[2] ಅಂದರೆ, ನಾನು ನಿಮಗೆ ಯಾವುದರ ಬಗ್ಗೆ ಎಚ್ಚರಿಕೆ ನೀಡುತ್ತಿದ್ದೇನೋ ಅದರ ಬಗ್ಗೆ ನನಗೆ ಜ್ಞಾನವಿರುಷ್ಟು ನಿಮಗೂ ಜ್ಞಾನವಿದೆ.

ಮಾಡಲಾಗಿರುವ ಸಂಗತಿಯು ಹತ್ತಿರದಲ್ಲಿದೆಯೋ ಅಥವಾ ವಿದೂರದಲ್ಲಿದೆಯೋ ಎಂದು ನನಗೆ ತಿಳಿದಿಲ್ಲ.

---

110. ನಿಶ್ಚಯವಾಗಿಯೂ ಅಲ್ಲಾಹು ಬಹಿರಂಗ ಮಾತುಗಳನ್ನು ತಿಳಿಯುತ್ತಾನೆ ಮತ್ತು ನೀವು ರಹಸ್ಯವಾಗಿಡುವುದನ್ನೂ ತಿಳಿಯುತ್ತಾನೆ.

إِنَّهُۥ يَعْلَمُ ٱلْجَهْرَ مِنَ ٱلْقَوْلِ وَيَعْلَمُ مَا تَكْتُمُونَ ﴿١١٠﴾

---

111. ನನಗೆ ಗೊತ್ತಿಲ್ಲ! ಬಹುಶಃ ಅದು ನಿಮಗೆ ಒಂದು ಪರೀಕ್ಷೆ ಮತ್ತು ನಿಶ್ಚಿತ ಕಾಲದವರೆಗಿನ ಆನಂದವಾಗಿರಬಹುದು."

وَإِنْ أَدْرِى لَعَلَّهُۥ فِتْنَةٌ لَّكُمْ وَمَتَٰعٌ إِلَىٰ حِينٍ ﴿١١١﴾

---

112. ಅವರು (ಪ್ರವಾದಿ) ಹೇಳಿದರು: "ನನ್ನ ಪರಿಪಾಲಕನೇ! ಸತ್ಯವಾಗಿ ತೀರ್ಪು ನೀಡು. ನಮ್ಮ ಪರಿಪಾಲಕನು (ಅಲ್ಲಾಹು) ಪರಮ ದಯಾಳುವಾಗಿದ್ದಾನೆ. ನೀವು ಸುಳ್ಳು ಸುಳ್ಳಾಗಿ ಆರೋಪಿಸುವ ಎಲ್ಲಾ ವಿಷಯಗಳ ಬಗ್ಗೆ ಸಹಾಯ ಬೇಡಲಾಗುವವನು ಅವನೇ."

قَٰلَ رَبِّ ٱحْكُم بِٱلْحَقِّ ۗ وَرَبُّنَا ٱلرَّحْمَٰنُ ٱلْمُسْتَعَانُ عَلَىٰ مَا تَصِفُونَ ﴿١١٢﴾

# 22. ಅಲ್-ಹಜ್ಜ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسْمِ ٱللَّهِ ٱلرَّحْمَٰنِ ٱلرَّحِيمِ

---

1. ಓ ಮನುಷ್ಯರೇ! ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಭಯಪಡಿರಿ. ನಿಶ್ಚಯವಾಗಿಯೂ ಅಂತ್ಯಸಮಯದ ಕಂಪನವು ಭಯಾನಕ ಸಂಗತಿಯಾಗಿದೆ.

يَٰٓأَيُّهَا ٱلنَّاسُ ٱتَّقُوا۟ رَبَّكُمْ ۚ إِنَّ زَلْزَلَةَ ٱلسَّاعَةِ شَىْءٌ عَظِيمٌ ﴿١﴾

---

2. ನೀವು ಅದನ್ನು ಕಾಣುವ ದಿನ ಹೇಗಿದೆಯೆಂದರೆ, ಅಂದು ಸ್ತನಪಾನ ಮಾಡುವ ತಾಯಂದಿರು ಸ್ತನ ಚೀಪುವ ಮಗುವನ್ನು ಮರೆಯುವರು, ಗರ್ಭಿಣಿಯರು ತನ್ನ ಗರ್ಭದಲ್ಲಿರುವುದನ್ನು ಹಡೆಯುವರು ಮತ್ತು ಜನರು ನಶೆಯಲ್ಲಿರುವಂತೆ ನಿಮಗೆ ಕಾಣುವರು. ವಾಸ್ತವವಾಗಿ ಅವರು ನಶೆಯಲ್ಲಿಲ್ಲ. ಆದರೆ ಅಲ್ಲಾಹನ ಶಿಕ್ಷೆಯು ಅತಿ ಕಠೋರವಾಗಿದೆ.

يَوْمَ تَرَوْنَهَا تَذْهَلُ كُلُّ مُرْضِعَةٍ عَمَّآ أَرْضَعَتْ وَتَضَعُ كُلُّ ذَاتِ حَمْلٍ حَمْلَهَا وَتَرَى ٱلنَّاسَ سُكَٰرَىٰ وَمَا هُم بِسُكَٰرَىٰ وَلَٰكِنَّ عَذَابَ ٱللَّهِ شَدِيدٌ ﴿٢﴾

---

3. ಜನರಲ್ಲಿ ಕೆಲವರಿದ್ದಾರೆ. ಅವರು ಯಾವುದೇ ಜ್ಞಾನವಿಲ್ಲದೆ ಅಲ್ಲಾಹನ ವಿಷಯದಲ್ಲಿ ತರ್ಕಿಸುತ್ತಾರೆ ಮತ್ತು ದಂಗೆಕೋರರಾದ ಎಲ್ಲಾ ಶೈತಾನರನ್ನು ಹಿಂಬಾಲಿಸುತ್ತಾರೆ.

وَمِنَ ٱلنَّاسِ مَن يُجَٰدِلُ فِى ٱللَّهِ بِغَيْرِ عِلْمٍ وَيَتَّبِعُ كُلَّ شَيْطَٰنٍ مَّرِيدٍ ﴿٣﴾

---

4. ಯಾರು ಅವನನ್ನು (ಶೈತಾನನನ್ನು) ಗೆಳೆಯನಾಗಿ ಸ್ವೀಕರಿಸುತ್ತಾನೋ, ಅವನನ್ನು ಶೈತಾನನು ದಾರಿತಪ್ಪಿಸುತ್ತಾನೆ ಮತ್ತು ಜ್ವಲಿಸುವ ನರಕ ಶಿಕ್ಷೆಗೆ ಒಯ್ಯುತ್ತಾನೆ ಎಂದು ಅವನ ಬಗ್ಗೆ ಲಿಖಿತಗೊಳಿಸಲಾಗಿದೆ.

كُتِبَ عَلَيْهِ أَنَّهُۥ مَن تَوَلَّاهُ فَأَنَّهُۥ يُضِلُّهُۥ وَيَهْدِيهِ إِلَىٰ عَذَابِ ٱلسَّعِيرِ ﴿٤﴾

5. ಮನುಷ್ಯರೇ! ಪುನರುತ್ಥಾನದ ಬಗ್ಗೆ ನಿಮಗೆ ಸಂಶಯವಿದ್ದರೆ (ಆಲೋಚಿಸಿ ನೋಡಿ). ನಿಶ್ಚಯವಾಗಿಯೂ, ನಾವು ನಿಮ್ಮನ್ನು ಮಣ್ಣಿನಿಂದ, ನಂತರ ವೀರ್ಯದಿಂದ, ನಂತರ ರಕ್ತಪಿಂಡದಿಂದ, ನಂತರ ರೂಪ ನೀಡಲಾದ ಮತ್ತು ರೂಪ ನೀಡಲ್ಪಡದ ಮಾಂಸ ಮುದ್ದೆಯಿಂದ ಸೃಷ್ಟಿಸಿದೆವು. ನಾವು ಇದನ್ನು ನಿಮಗೆ ವಿವರಿಸಿಕೊಡುತ್ತಿದ್ದೇವೆ. ನಂತರ ನಾವು ಇಚ್ಛಿಸುವ ನಿಶ್ಚಿತ ಅವಧಿಯ ತನಕ ಅದನ್ನು ಗರ್ಭಾಶಯಗಳಲ್ಲಿ ಇಡುತ್ತೇವೆ. ನಂತರ ನಿಮ್ಮನ್ನು ಶಿಶುವಿನ ರೂಪದಲ್ಲಿ ಹೊರತರುತ್ತೇವೆ. ನೀವು ನಿಮ್ಮ ಪೂರ್ಣ ಯೌವನವನ್ನು ತಲುಪುವುದಕ್ಕಾಗಿ. ನಿಮ್ಮಲ್ಲಿ ಕೆಲವರು ನಿಧನರಾಗುತ್ತಾರೆ. ಕೆಲವರು ಅನೇಕ ವಿಷಯಗಳನ್ನು ತಿಳಿದುಕೊಂಡ ಬಳಿಕವೂ ಏನೂ ತಿಳಿಯದ ಅವಸ್ಥೆಗೆ ತಲುಪುವ ರೀತಿಯಲ್ಲಿ ಹಣ್ಣು ಹಣ್ಣು ಮುದುಕರಾಗುವ ಪ್ರಾಯಕ್ಕೆ ಮರಳಿಸಲ್ಪಡುತ್ತಾರೆ. ಭೂಮಿಯು ಒಣಗಿ ನಿರ್ಜೀವವಾಗಿರುವುದನ್ನು ನೀವು ಕಾಣುವಿರಿ. ನಂತರ ನಾವು ಅದರ ಮೇಲೆ ಮಳೆಯನ್ನು ಸುರಿಸಿದಾಗ, ಅದು ಮೈಗೊಡವಿ ಎದ್ದು ಬೆಳವಣಿಗೆ ಪಡೆಯುತ್ತದೆ ಮತ್ತು ಅಪ್ಯಾಯಮಾನವಾದ ಎಲ್ಲಾ ರೀತಿಯ ಸಸ್ಯಗಳನ್ನು ಉತ್ಪಾದಿಸುತ್ತದೆ.

يَٰٓأَيُّهَا ٱلنَّاسُ إِن كُنتُمۡ فِي رَيۡبٖ مِّنَ ٱلۡبَعۡثِ فَإِنَّا خَلَقۡنَٰكُم مِّن تُرَابٖ ثُمَّ مِن نُّطۡفَةٖ ثُمَّ مِنۡ عَلَقَةٖ ثُمَّ مِن مُّضۡغَةٖ مُّخَلَّقَةٖ وَغَيۡرِ مُخَلَّقَةٖ لِّنُبَيِّنَ لَكُمۡۚ وَنُقِرُّ فِي ٱلۡأَرۡحَامِ مَا نَشَآءُ إِلَىٰٓ أَجَلٖ مُّسَمّٗى ثُمَّ نُخۡرِجُكُمۡ طِفۡلٗا ثُمَّ لِتَبۡلُغُوٓاْ أَشُدَّكُمۡۖ وَمِنكُم مَّن يُتَوَفَّىٰ وَمِنكُم مَّن يُرَدُّ إِلَىٰٓ أَرۡذَلِ ٱلۡعُمُرِ لِكَيۡلَا يَعۡلَمَ مِنۢ بَعۡدِ عِلۡمٖ شَيۡـٔٗاۚ وَتَرَى ٱلۡأَرۡضَ هَامِدَةٗ فَإِذَآ أَنزَلۡنَا عَلَيۡهَا ٱلۡمَآءَ ٱهۡتَزَّتۡ وَرَبَتۡ وَأَنۢبَتَتۡ مِن كُلِّ زَوۡجِۭ بَهِيجٖ ٥

6. ಅದೇಕೆಂದರೆ ಅಲ್ಲಾಹನೇ ಸತ್ಯ. ಅವನು ಸತ್ತವರಿಗೆ ಜೀವ ನೀಡುತ್ತಾನೆ. ಅವನು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

ذَٰلِكَ بِأَنَّ ٱللَّهَ هُوَ ٱلۡحَقُّ وَأَنَّهُۥ يُحۡيِ ٱلۡمَوۡتَىٰ وَأَنَّهُۥ عَلَىٰ كُلِّ شَيۡءٖ قَدِيرٞ ٦

7. ಅಂತ್ಯಸಮಯವು ಬಂದೇ ಬರುತ್ತದೆ. ಅದರಲ್ಲಿ ಸಂಶಯವೇ ಇಲ್ಲ. ಸಮಾಧಿಗಳಲ್ಲಿರುವವರನ್ನು ಅಲ್ಲಾಹು ಜೀವ ನೀಡಿ ಎಬ್ಬಿಸುತ್ತಾನೆ.

وَأَنَّ ٱلسَّاعَةَ ءَاتِيَةٞ لَّا رَيۡبَ فِيهَا وَأَنَّ ٱللَّهَ يَبۡعَثُ مَن فِي ٱلۡقُبُورِ ٧

8. ಜನರಲ್ಲಿ ಕೆಲವರಿದ್ದಾರೆ. ಅವರು ಯಾವುದೇ ಜ್ಞಾನ, ಮಾರ್ಗದರ್ಶನ ಅಥವಾ ಬೆಳಕು ಚೆಲ್ಲುವ ಗ್ರಂಥದ ಆಧಾರವಿಲ್ಲದೆ ಅಲ್ಲಾಹನ ವಿಷಯದಲ್ಲಿ ತರ್ಕಿಸುತ್ತಾರೆ.

وَمِنَ ٱلنَّاسِ مَن يُجَٰدِلُ فِي ٱللَّهِ بِغَيۡرِ عِلۡمٖ وَلَا هُدٗى وَلَا كِتَٰبٖ مُّنِيرٖ ٨

9. ಅವನು (ಅಹಂಕಾರದಿಂದ) ತನ್ನ ಕತ್ತನ್ನು ತಿರುಗಿಸುತ್ತಾನೆ. ಜನರನ್ನು ಅಲ್ಲಾಹನ ಮಾರ್ಗದಿಂದ ತಪ್ಪಿಸುವುದಕ್ಕಾಗಿ. ಅವನಿಗೆ ಇಹಲೋಕದಲ್ಲೇ ಅಪಮಾನವಿದೆ. ಪುನರುತ್ಥಾನ ದಿನದಂದು ನಾವು ಅವನಿಗೆ ಸುಟ್ಟು ಕರಕಲಾಗಿಸುವ ಶಿಕ್ಷೆಯ ರುಚಿಯನ್ನು ತೋರಿಸುವೆವು.

ثَانِيَ عِطۡفِهِۦ لِيُضِلَّ عَن سَبِيلِ ٱللَّهِۖ لَهُۥ فِي ٱلدُّنۡيَا خِزۡيٞۖ وَنُذِيقُهُۥ يَوۡمَ ٱلۡقِيَٰمَةِ عَذَابَ ٱلۡحَرِيقِ ٩

10. ನಿನ್ನ ಕೈಗಳು ಮುಂದಕ್ಕೆ ಕಳುಹಿಸಿದ ದುಷ್ಕರ್ಮಗಳೇ ಇದಕ್ಕೆ

ذَٰلِكَ بِمَا قَدَّمَتۡ يَدَاكَ وَأَنَّ ٱللَّهَ لَيۡسَ بِظَلَّٰمٖ

| | | |
|---|---|---|
| | ಕಾರಣ. ಅಲ್ಲಾಹು ತನ್ನ ದಾಸರಿಗೆ ಸ್ವಲ್ಪವೂ ಅನ್ಯಾಯ ಮಾಡುವವನಲ್ಲ. | لِّلۡعَبِيدِ ﴿١٠﴾ |
| 11. | ಜನರಲ್ಲಿ ಕೆಲವರಿದ್ದಾರೆ. ಅವರು ಒಂದು ತುದಿಯಲ್ಲಿ ನಿಂತು ಅಲ್ಲಾಹನನ್ನು ಆರಾಧಿಸುತ್ತಾರೆ. ಅವರಿಗೆ ಏನಾದರೂ ಲಾಭವುಂಟಾದರೆ ಅವರು ಆಸಕ್ತಿಯಿಂದ ಅದನ್ನು ಸ್ವೀಕರಿಸುತ್ತಾರೆ. ಆದರೆ ಅವರಿಗೇನಾದರೂ ಪರೀಕ್ಷೆ ಎದುರಾದರೆ ಅವರು ಮುಖ ತಿರುಗಿಸಿ ನಡೆಯುತ್ತಾರೆ. ಅವನು ಇಹಲೋಕ ಮತ್ತು ಪರಲೋಕವನ್ನು ಕಳೆದುಕೊಂಡಿದ್ದಾನೆ. ಅದೇ ಅತ್ಯಂತ ಸ್ಪಷ್ಟವಾದ ನಷ್ಟ. | وَمِنَ ٱلنَّاسِ مَن يَعۡبُدُ ٱللَّهَ عَلَىٰ حَرۡفٖۖ فَإِنۡ أَصَابَهُۥ خَيۡرٌ ٱطۡمَأَنَّ بِهِۦۖ وَإِنۡ أَصَابَتۡهُ فِتۡنَةٌ ٱنقَلَبَ عَلَىٰ وَجۡهِهِۦ خَسِرَ ٱلدُّنۡيَا وَٱلۡأٓخِرَةَۚ ذَٰلِكَ هُوَ ٱلۡخُسۡرَانُ ٱلۡمُبِينُ ﴿١١﴾ |
| 12. | ಅವರು ಅಲ್ಲಾಹನನ್ನು ಬಿಟ್ಟು ಅವರಿಗೆ ತೊಂದರೆ ಅಥವಾ ಉಪಕಾರ ಮಾಡದವರನ್ನು ಕರೆದು ಪ್ರಾರ್ಥಿಸುತ್ತಾರೆ. ಅದೇ ಅತಿವಿದೂರವಾದ ದುರ್ಮಾರ್ಗ. | يَدۡعُواْ مِن دُونِ ٱللَّهِ مَا لَا يَضُرُّهُۥ وَمَا لَا يَنفَعُهُۥۚ ذَٰلِكَ هُوَ ٱلضَّلَٰلُ ٱلۡبَعِيدُ ﴿١٢﴾ |
| 13. | ಯಾರ ತೊಂದರೆಯು ಅವನ ಉಪಕಾರಕ್ಕಿಂತಲೂ ಹೆಚ್ಚು ಹತ್ತಿರದಲ್ಲಿದೆಯೋ ಅಂತಹವರನ್ನು ಅವರು ಕರೆದು ಪ್ರಾರ್ಥಿಸುತ್ತಾರೆ. ಅವನು ಬಹಳ ಕೆಟ್ಟ ರಕ್ಷಕನಾಗಿದ್ದಾನೆ. ಅವನು ಬಹಳ ನಿಕೃಷ್ಟ ಸಹಾಯಕನಾಗಿದ್ದಾನೆ. | يَدۡعُواْ لَمَن ضَرُّهُۥٓ أَقۡرَبُ مِن نَّفۡعِهِۦۚ لَبِئۡسَ ٱلۡمَوۡلَىٰ وَلَبِئۡسَ ٱلۡعَشِيرُ ﴿١٣﴾ |
| 14. | ನಿಶ್ಚಯವಾಗಿಯೂ ಅಲ್ಲಾಹು ಸತ್ಯವಿಶ್ವಾಸಿಗಳನ್ನು ಮತ್ತು ಸತ್ಕರ್ಮವೆಸಗಿದವರನ್ನು ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳಿಗೆ ಪ್ರವೇಶ ಮಾಡಿಸುವನು. ನಿಶ್ಚಯವಾಗಿಯೂ ಅಲ್ಲಾಹು ಅವನು ಬಯಸುವುದನ್ನು ಮಾಡುತ್ತಾನೆ. | إِنَّ ٱللَّهَ يُدۡخِلُ ٱلَّذِينَ ءَامَنُواْ وَعَمِلُواْ ٱلصَّٰلِحَٰتِ جَنَّٰتٖ تَجۡرِي مِن تَحۡتِهَا ٱلۡأَنۡهَٰرُۚ إِنَّ ٱللَّهَ يَفۡعَلُ مَا يُرِيدُ ﴿١٤﴾ |
| 15. | ಅಲ್ಲಾಹು ತನ್ನ ಪ್ರವಾದಿಗೆ ಇಹಲೋಕದಲ್ಲಿ ಮತ್ತು ಪರಲೋಕದಲ್ಲಿ ಸಹಾಯ ಮಾಡುವುದಿಲ್ಲ ಎಂದು ಭಾವಿಸುವವನು ಛಾವಣಿಗೆ ಹಗ್ಗ ಕಟ್ಟಿ (ತನ್ನ ಕೊರಳಿಗೆ ಉರುಳು ಹಾಕಿ) ಸಾಯಲಿ. ನಂತರ ತನ್ನ ಚಾಲಾಕಿತನದಿಂದ ತನ್ನನ್ನು ಕೆರಳಿಸುವ ಆ ವಿಷಯವು ನಿವಾರಣೆಯಾಗುತ್ತದೋ ಎಂದು ನೋಡಲಿ. | مَن كَانَ يَظُنُّ أَن لَّن يَنصُرَهُ ٱللَّهُ فِي ٱلدُّنۡيَا وَٱلۡأٓخِرَةِ فَلۡيَمۡدُدۡ بِسَبَبٍ إِلَى ٱلسَّمَآءِ ثُمَّ لۡيَقۡطَعۡ فَلۡيَنظُرۡ هَلۡ يُذۡهِبَنَّ كَيۡدُهُۥ مَا يَغِيظُ ﴿١٥﴾ |
| 16. | ಈ ರೀತಿ ನಾವು ಸ್ಪಷ್ಟ ಸಾಕ್ಷ್ಯಾಧಾರಗಳ ರೂಪದಲ್ಲಿ ಈ ಗ್ರಂಥವನ್ನು ಅವತೀರ್ಣಗೊಳಿಸಿದ್ದೇವೆ. ನಿಶ್ಚಯವಾಗಿಯೂ ಅಲ್ಲಾಹು ಅವನು ಬಯಸುವವರಿಗೆ ಸನ್ಮಾರ್ಗ ತೋರಿಸುತ್ತಾನೆ. | وَكَذَٰلِكَ أَنزَلۡنَٰهُ ءَايَٰتِۭ بَيِّنَٰتٖ وَأَنَّ ٱللَّهَ يَهۡدِي مَن يُرِيدُ ﴿١٦﴾ |
| 17. | ನಿಶ್ಚಯವಾಗಿಯೂ ಸತ್ಯವಿಶ್ವಾಸಿಗಳು, ಯಹೂದಿಗಳು, ಸಾಬಿಗಳು, ಕ್ರೈಸ್ತರು, ಅಗ್ನಿಯಾರಾಧಕರು, ಬಹುದೇವಾರಾಧಕರು—ಅಲ್ಲಾಹು ಇವರೆಲ್ಲರ ಮಧ್ಯೆ ಪುನರುತ್ಥಾನ ದಿನದಂದು | إِنَّ ٱلَّذِينَ ءَامَنُواْ وَٱلَّذِينَ هَادُواْ وَٱلصَّٰبِـِٔينَ وَٱلنَّصَٰرَىٰ وَٱلۡمَجُوسَ وَٱلَّذِينَ أَشۡرَكُوٓاْ إِنَّ ٱللَّهَ يَفۡصِلُ بَيۡنَهُمۡ يَوۡمَ ٱلۡقِيَٰمَةِۚ إِنَّ ٱللَّهَ عَلَىٰ كُلِّ |

ತೀರ್ಪು ನೀಡುವನು. ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ವಿಷಯಗಳಿಗೂ ಸಾಕ್ಷಿಯಾಗಿದ್ದಾನೆ.

شَيۡءٖ شَهِيدٌ ١٧

---

18. ಆಕಾಶಗಳಲ್ಲಿರುವವರು, ಭೂಮಿಯಲ್ಲಿರುವವರು, ಸೂರ್ಯ, ಚಂದ್ರ, ತಾರೆಗಳು, ಪರ್ವತಗಳು, ಮರಗಳು, ಜೀವರಾಶಿಗಳು ಮತ್ತು ಜನರಲ್ಲಿ ಅನೇಕರು ಅಲ್ಲಾಹನಿಗೆ ಸಾಷ್ಟಾಂಗ ಮಾಡುವುದನ್ನು ನೀವು ನೋಡುವುದಿಲ್ಲವೇ? ಶಿಕ್ಷೆಯು ದೃಢಪಟ್ಟ ಅನೇಕ ಮಂದಿಯೂ ಜನರಲ್ಲಿದ್ದಾರೆ. ಅಲ್ಲಾಹು ಯಾರನ್ನು ಅವಮಾನಿಸುತ್ತಾನೋ ಅವನಿಗೆ ಗೌರವ ನೀಡುವವರಾರೂ ಇಲ್ಲ. ನಿಶ್ಚಯವಾಗಿಯೂ ಅಲ್ಲಾಹು ಅವನು ಇಚ್ಛಿಸುವುದನ್ನು ಮಾಡುತ್ತಾನೆ.

أَلَمۡ تَرَ أَنَّ ٱللَّهَ يَسۡجُدُ لَهُۥ مَن فِي ٱلسَّمَٰوَٰتِ وَمَن فِي ٱلۡأَرۡضِ وَٱلشَّمۡسُ وَٱلۡقَمَرُ وَٱلنُّجُومُ وَٱلۡجِبَالُ وَٱلشَّجَرُ وَٱلدَّوَآبُّ وَكَثِيرٞ مِّنَ ٱلنَّاسِۖ وَكَثِيرٌ حَقَّ عَلَيۡهِ ٱلۡعَذَابُۗ وَمَن يُهِنِ ٱللَّهُ فَمَا لَهُۥ مِن مُّكۡرِمٍۚ إِنَّ ٱللَّهَ يَفۡعَلُ مَا يَشَآءُ ١٨

---

19. ಈ ಎರಡು ಗುಂಪುಗಳು ತಮ್ಮ ಪರಿಪಾಲಕನ (ಅಲ್ಲಾಹನ) ವಿಷಯದಲ್ಲಿ ತರ್ಕಿಸುತ್ತಾರೆ. ಸತ್ಯನಿಷೇಧಿಗಳು ಯಾರೋ—ಅವರಿಗೆ ಅಗ್ನಿಯ ಉಡುಪುಗಳನ್ನು ಕತ್ತರಿಸಿ ಕೊಡಲಾಗುವುದು. ಅವರ ತಲೆಯ ಮೇಲೆ ಕುದಿಯುವ ನೀರನ್ನು ಸುರಿಯಲಾಗುವುದು.

۞هَٰذَانِ خَصۡمَانِ ٱخۡتَصَمُواْ فِي رَبِّهِمۡۖ فَٱلَّذِينَ كَفَرُواْ قُطِّعَتۡ لَهُمۡ ثِيَابٞ مِّن نَّارٖ يُصَبُّ مِن فَوۡقِ رُءُوسِهِمُ ٱلۡحَمِيمُ ١٩

---

20. ಅದರಿಂದ ಅವರ ಉದರ ಮತ್ತು ಚರ್ಮಗಳ ಒಳಗಿರುವುದೆಲ್ಲವೂ ಕರಗಿ ಬಿಡುತ್ತವೆ.

يُصۡهَرُ بِهِۦ مَا فِي بُطُونِهِمۡ وَٱلۡجُلُودُ ٢٠

---

21. ಅವರನ್ನು ಶಿಕ್ಷಿಸಲು ಕಬ್ಬಿಣದ ಸಲಾಖೆಗಳಿವೆ.

وَلَهُم مَّقَٰمِعُ مِنۡ حَدِيدٖ ٢١

---

22. ಕಡು ಸಂಕಟದಿಂದ ಅವರು ಅದರಿಂದ ತಪ್ಪಿಸಿಕೊಳ್ಳಲು ಬಯಸುವಾಗಲೆಲ್ಲ ಅವರನ್ನು ಅದಕ್ಕೇ ಮರಳಿಸಲಾಗುವುದು. “ಸುಟ್ಟು ಕರಕಲಾಗಿಸುವ ಶಿಕ್ಷೆಯ ರುಚಿಯನ್ನು ನೋಡಿರಿ” (ಎಂದು ಅವರೊಡನೆ ಹೇಳಲಾಗುವುದು).

كُلَّمَآ أَرَادُوٓاْ أَن يَخۡرُجُواْ مِنۡهَا مِنۡ غَمٍّ أُعِيدُواْ فِيهَا وَذُوقُواْ عَذَابَ ٱلۡحَرِيقِ ٢٢

---

23. ನಿಶ್ಚಯವಾಗಿಯೂ ಅಲ್ಲಾಹು ಸತ್ಯವಿಶ್ವಾಸಿಗಳನ್ನು ಮತ್ತು ಸತ್ಕರ್ಮವೆಸಗಿದವರನ್ನು ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳಿಗೆ ಪ್ರವೇಶ ಮಾಡಿಸುವನು. ಅಲ್ಲಿ ಅವರಿಗೆ ಬಂಗಾರದ ಕಡಗಗಳನ್ನು ಮತ್ತು ಮುತ್ತುಗಳನ್ನು ತೊಡಿಸಲಾಗುವುದು. ಅಲ್ಲಿ ಅವರ ಉಡುಪು ರೇಷ್ಮೆಯಾಗಿರುವುದು.

إِنَّ ٱللَّهَ يُدۡخِلُ ٱلَّذِينَ ءَامَنُواْ وَعَمِلُواْ ٱلصَّٰلِحَٰتِ جَنَّٰتٖ تَجۡرِي مِن تَحۡتِهَا ٱلۡأَنۡهَٰرُ يُحَلَّوۡنَ فِيهَا مِنۡ أَسَاوِرَ مِن ذَهَبٖ وَلُؤۡلُؤٗاۖ وَلِبَاسُهُمۡ فِيهَا حَرِيرٞ ٢٣

---

24. ಪರಿಶುದ್ಧ ಮಾತಿನ ಕಡೆಗೆ ಅವರಿಗೆ ಮಾರ್ಗದರ್ಶನ ಮಾಡಲಾಗಿದೆ. ಸ್ತುತ್ಯರ್ಹನಾದ ಅಲ್ಲಾಹನ ಮಾರ್ಗದ ಕಡೆಗೆ ಅವರಿಗೆ ಮಾರ್ಗದರ್ಶನ ಮಾಡಲಾಗಿದೆ.

وَهُدُوٓاْ إِلَى ٱلطَّيِّبِ مِنَ ٱلۡقَوۡلِ وَهُدُوٓاْ إِلَىٰ صِرَٰطِ ٱلۡحَمِيدِ ٢٤

| | |
|---|---|
| 25. ನಿಶ್ಚಯವಾಗಿಯೂ ಸತ್ಯನಿಷೇಧಿಗಳು ಮತ್ತು ಅಲ್ಲಾಹನ ಮಾರ್ಗದಿಂದ ಹಾಗೂ (ಮಕ್ಕಾದ) ಪವಿತ್ರ ಮಸೀದಿಯಿಂದ ಜನರನ್ನು ತಡೆಯುವವರು ಯಾರೋ—ಆ ಮಸೀದಿಯನ್ನು ನಾವು ಅಲ್ಲಿನ ನಿವಾಸಿಗಳು ಮತ್ತು ಹೊರಗಿನವರು ಸೇರಿದಂತೆ ಎಲ್ಲಾ ಜನರಿಗೂ ಸಮಾನ ಹಕ್ಕಿರುವಂತೆ ಮಾಡಿದ್ದೇವೆ. ಯಾರು ಅಲ್ಲಿ ಅನ್ಯಾಯವಾಗಿ ಧರ್ಮಬಾಹಿರ ಕೃತ್ಯವನ್ನು ಮಾಡಲು ಬಯಸುತ್ತಾನೋ ಅವನಿಗೆ ನಾವು ಯಾತನಾಮಯ ಶಿಕ್ಷೆಯ ರುಚಿಯನ್ನು ತೋರಿಸುವೆವು. | إِنَّ ٱلَّذِينَ كَفَرُواْ وَيَصُدُّونَ عَن سَبِيلِ ٱللَّهِ وَٱلۡمَسۡجِدِ ٱلۡحَرَامِ ٱلَّذِي جَعَلۡنَٰهُ لِلنَّاسِ سَوَآءً ٱلۡعَٰكِفُ فِيهِ وَٱلۡبَادِۚ وَمَن يُرِدۡ فِيهِ بِإِلۡحَادِۭ بِظُلۡمٖ نُّذِقۡهُ مِنۡ عَذَابٍ أَلِيمٖ ﴿٢٥﴾ |
| 26. ನಾವು ಇಬ್ರಾಹೀಮರಿಗೆ ಆ ಭವನದ (ಕಅಬಾಲಯದ) ಸ್ಥಳವನ್ನು ನಿಗದಿಪಡಿಸಿದ ಸಂದರ್ಭ. (ನಾವು ಅವರಿಗೆ ಆಜ್ಞಾಪಿಸಿದೆವು): "ನನ್ನೊಂದಿಗೆ ಯಾರನ್ನೂ ಸಹಭಾಗಿಯಾಗಿ ಮಾಡಬೇಡಿ ಮತ್ತು ಪ್ರದಕ್ಷಿಣೆ ಮಾಡುವವರಿಗೆ, ನಿಂತು, ಬಾಗಿ ಮತ್ತು ಸಾಷ್ಟಾಂಗ ಮಾಡುತ್ತಾ ಪ್ರಾರ್ಥಿಸುವವರಿಗೆ ನನ್ನ ಭವನವನ್ನು ಶುದ್ಧೀಕರಿಸಿರಿ. | وَإِذۡ بَوَّأۡنَا لِإِبۡرَٰهِيمَ مَكَانَ ٱلۡبَيۡتِ أَن لَّا تُشۡرِكۡ بِي شَيۡـٔٗا وَطَهِّرۡ بَيۡتِيَ لِلطَّآئِفِينَ وَٱلۡقَآئِمِينَ وَٱلرُّكَّعِ ٱلسُّجُودِ ﴿٢٦﴾ |
| 27. ಜನರಿಗೆ ಹಜ್ಜ್ ನಿರ್ವಹಿಸಲು ಕರೆ ನೀಡಿರಿ. ಜನರು ತಮ್ಮ ಬಳಿಗೆ ಕಾಲ್ನಡಿಗೆಯಲ್ಲಿ ಮತ್ತು ಸಣಕಲು ಒಂಟೆಗಳ ಮೇಲೇರಿ ಬರುವರು. ಅವರು ವಿದೂರವಾದ ಎಲ್ಲಾ ಸ್ಥಳಗಳಿಂದಲೂ ಬರುವರು. | وَأَذِّن فِي ٱلنَّاسِ بِٱلۡحَجِّ يَأۡتُوكَ رِجَالٗا وَعَلَىٰ كُلِّ ضَامِرٖ يَأۡتِينَ مِن كُلِّ فَجٍّ عَمِيقٖ ﴿٢٧﴾ |
| 28. ಅವರಿಗೆ ಪ್ರಯೋಜನವಾಗುವುದನ್ನು ಪಡೆಯಲು ಮತ್ತು ನಿಶ್ಚಿತ ದಿನಗಳಲ್ಲಿ ಅಲ್ಲಾಹನ ಹೆಸರನ್ನು ಉಚ್ಚರಿಸಿ ಅವನು ಒದಗಿಸಿದ ಜಾನುವಾರುಗಳನ್ನು ಬಲಿ ನೀಡಲು. ಅದರ ಮಾಂಸವನ್ನು ನೀವು ತಿನ್ನಿರಿ ಮತ್ತು ಹಸಿದ ಬಡವರಿಗೂ ತಿನ್ನಲು ನೀಡಿರಿ. | لِّيَشۡهَدُواْ مَنَٰفِعَ لَهُمۡ وَيَذۡكُرُواْ ٱسۡمَ ٱللَّهِ فِيٓ أَيَّامٖ مَّعۡلُومَٰتٍ عَلَىٰ مَا رَزَقَهُم مِّنۢ بَهِيمَةِ ٱلۡأَنۡعَٰمِۖ فَكُلُواْ مِنۡهَا وَأَطۡعِمُواْ ٱلۡبَآئِسَ ٱلۡفَقِيرَ ﴿٢٨﴾ |
| 29. ನಂತರ ಅವರು ತಮ್ಮ ಕೊಳೆಯನ್ನು ನಿವಾರಿಸಲಿ,[1] ತಮ್ಮ ಹರಕೆಗಳನ್ನು ಸಂದಾಯ ಮಾಡಲಿ ಮತ್ತು ಆ ಪ್ರಾಚೀನ ಭವನಕ್ಕೆ ಪ್ರದಕ್ಷಿಣೆ ಮಾಡಲಿ." | ثُمَّ لۡيَقۡضُواْ تَفَثَهُمۡ وَلۡيُوفُواْ نُذُورَهُمۡ وَلۡيَطَّوَّفُواْ بِٱلۡبَيۡتِ ٱلۡعَتِيقِ ﴿٢٩﴾ |
| 30. ಇದು. ಅಲ್ಲಾಹು ಪವಿತ್ರಗೊಳಿಸಿದ್ದನ್ನು ಯಾರು ಗೌರವಿಸುತ್ತಾರೋ ಅದು ಅವರಿಗೆ ಅವರ ಪರಿಪಾಲಕನ (ಅಲ್ಲಾಹನ) ಬಳಿ ಶ್ರೇಷ್ಠವಾಗಿದೆ. ನಿಮಗೆ ಜಾನುವಾರುಗಳನ್ನು ಧರ್ಮಸಮ್ಮತಗೊಳಿಸಲಾಗಿದೆ. ಆದರೆ ಈಗಾಗಲೇ (ನಿಷಿದ್ಧವೆಂದು) ವಿವರಿಸಲಾಗಿರುವವುಗಳ ಹೊರತು. ನೀವು ವಿಗ್ರಹಗಳ ಹೊಲಸಿನಿಂದ ದೂರವಿರಿ ಮತ್ತು ಸುಳ್ಳು ಮಾತುಗಳಿಂದಲೂ ದೂರವಿರಿ. | ذَٰلِكَۖ وَمَن يُعَظِّمۡ حُرُمَٰتِ ٱللَّهِ فَهُوَ خَيۡرٞ لَّهُۥ عِندَ رَبِّهِۦۗ وَأُحِلَّتۡ لَكُمُ ٱلۡأَنۡعَٰمُ إِلَّا مَا يُتۡلَىٰ عَلَيۡكُمۡۖ فَٱجۡتَنِبُواْ ٱلرِّجۡسَ مِنَ ٱلۡأَوۡثَٰنِ وَٱجۡتَنِبُواْ قَوۡلَ ٱلزُّورِ ﴿٣٠﴾ |

[1] ಕೊಳೆ ನಿವಾರಿಸುವುದು ಎಂದರೆ ಕೂದಲು, ಉಗುರುಗಳನ್ನು ಕತ್ತರಿಸುವುದು.

31. ಏಕನಿಷ್ಠರಾಗಿ ಅಲ್ಲಾಹನ ಕಡೆಗೆ ತಿರುಗಿರಿ ಮತ್ತು ಅವನೊಡನೆ ಸಹಭಾಗಿತ್ವ (ಶಿರ್ಕ್) ಮಾಡಬೇಡಿ. ಯಾರು ಅಲ್ಲಾಹನೊಡನೆ ಸಹಭಾಗಿತ್ವ (ಶಿರ್ಕ್) ಮಾಡುತ್ತಾನೋ ಅವನ ಸ್ಥಿತಿಯು ಆಕಾಶದಿಂದ ಕೆಳಗೆ ಬೀಳುವವನಂತೆ. ಹಕ್ಕಿಗಳು ಅವನನ್ನು ಕಸಿದುಕೊಂಡು ಹೋಗಬಹುದು; ಅಥವಾ ಗಾಳಿಯು ಅವನನ್ನು ವಿದೂರ ಸ್ಥಳಕ್ಕೆ ಒಯ್ಯಬಹುದು.

حُنَفَآءَ لِلَّهِ غَيۡرَ مُشۡرِكِينَ بِهِۦۚ وَمَن يُشۡرِكۡ بِٱللَّهِ فَكَأَنَّمَا خَرَّ مِنَ ٱلسَّمَآءِ فَتَخۡطَفُهُ ٱلطَّيۡرُ أَوۡ تَهۡوِي بِهِ ٱلرِّيحُ فِي مَكَانٖ سَحِيقٖ ٣١

32. ಇದು. ಯಾರು ಅಲ್ಲಾಹನ ಧರ್ಮಲಾಂಛನಗಳನ್ನು ಗೌರವಿಸುತ್ತಾರೋ—ನಿಶ್ಚಯವಾಗಿಯೂ ಅದು ಹೃದಯಗಳ-ಲ್ಲಿರುವ ದೇವಭಯದಿಂದಾಗಿದೆ.

ذَٰلِكَۖ وَمَن يُعَظِّمۡ شَعَٰٓئِرَ ٱللَّهِ فَإِنَّهَا مِن تَقۡوَى ٱلۡقُلُوبِ ٣٢

33. ನಿಮಗೆ ಅವುಗಳಲ್ಲಿ (ಬಲಿಮೃಗಗಳಲ್ಲಿ) ಒಂದು ನಿಶ್ಚಿತ ಅವಧಿಯ ತನಕ ಪ್ರಯೋಜನಗಳಿವೆ. ನಂತರ ಅವುಗಳನ್ನು ಬಲಿ ನೀಡಬೇಕಾದ ಸ್ಥಳವು ಆ ಪ್ರಾಚೀನ ಭವನವಾಗಿದೆ.

لَكُمۡ فِيهَا مَنَٰفِعُ إِلَىٰٓ أَجَلٖ مُّسَمّٗى ثُمَّ مَحِلُّهَآ إِلَى ٱلۡبَيۡتِ ٱلۡعَتِيقِ ٣٣

34. ನಾವು ಎಲ್ಲಾ ಸಮುದಾಯಗಳಿಗೂ ಬಲಿಕರ್ಮವನ್ನು ನಿಶ್ಚಯಿಸಿದ್ದೇವೆ. ಅವರು ಅಲ್ಲಾಹನ ಹೆಸರು ಉಚ್ಛರಿಸಿ ಅವನು ಅವರಿಗೆ ಆಹಾರವಾಗಿ ಒದಗಿಸಿದ ಜಾನುವಾರುಗಳನ್ನು ಬಲಿ ನೀಡಲೆಂದು. ನಿಮ್ಮ ದೇವನು ಏಕೈಕ ದೇವನು. ಆದ್ದರಿಂದ ಅವನಿಗೆ ಮಾತ್ರ ಶರಣಾಗಿರಿ. ವಿನಮ್ರತೆ ತೋರುವವರಿಗೆ ಸುವಾರ್ತೆಯನ್ನು ತಿಳಿಸಿರಿ.

وَلِكُلِّ أُمَّةٖ جَعَلۡنَا مَنسَكٗا لِّيَذۡكُرُواْ ٱسۡمَ ٱللَّهِ عَلَىٰ مَا رَزَقَهُم مِّنۢ بَهِيمَةِ ٱلۡأَنۡعَٰمِۗ فَإِلَٰهُكُمۡ إِلَٰهٞ وَٰحِدٞ فَلَهُۥٓ أَسۡلِمُواْۗ وَبَشِّرِ ٱلۡمُخۡبِتِينَ ٣٤

35. ಅವರು ಯಾರೆಂದರೆ, ಅವರ ಮುಂದೆ ಅಲ್ಲಾಹನ ಹೆಸರನ್ನು ಹೇಳಲಾದರೆ ಅವರ ಹೃದಯಗಳು ನಡುಗುತ್ತವೆ. ಅವರಿಗೆ ಕೇಡುಕುಗಳು ಸಂಭವಿಸಿದರೆ ಅವರು ತಾಳ್ಮೆಯಿಂದ ಸಹಿಸುತ್ತಾರೆ. ಅವರು ನಮಾಝನ್ನು ಸಂಸ್ಥಾಪಿಸುತ್ತಾರೆ ಮತ್ತು ನಾವು ನೀಡಿದ ಧನದಿಂದ ಖರ್ಚು ಮಾಡುತ್ತಾರೆ.

ٱلَّذِينَ إِذَا ذُكِرَ ٱللَّهُ وَجِلَتۡ قُلُوبُهُمۡ وَٱلصَّٰبِرِينَ عَلَىٰ مَآ أَصَابَهُمۡ وَٱلۡمُقِيمِي ٱلصَّلَوٰةِ وَمِمَّا رَزَقۡنَٰهُمۡ يُنفِقُونَ ٣٥

36. ನಾವು ಬಲಿ ಒಂಟೆಗಳನ್ನು ನಿಮಗೋಸ್ಕರ ಅಲ್ಲಾಹನ ಲಾಂಛನಗಳಲ್ಲಿ ಸೇರಿಸಿದ್ದೇವೆ. ನಿಮಗೆ ಅದರಲ್ಲಿ ಒಳಿತಿದೆ. ಆದ್ದರಿಂದ, ಅವುಗಳನ್ನು ಸಾಲಾಗಿ ನಿಲ್ಲಿಸಿ ಅವುಗಳ ಮೇಲೆ ಅಲ್ಲಾಹನ ಹೆಸರನ್ನು ಉಚ್ಛರಿಸಿರಿ. ನಂತರ ಅವು ತಮ್ಮ ಪಾರ್ಶ್ವಗಳ ಮೇಲೆ ಬಿದ್ದರೆ, ನೀವೂ ತಿನ್ನಿರಿ ಮತ್ತು ನಿಮ್ಮ ಮುಂದೆ ಕೈಯೊಡ್ಡದ ಬಡವರಿಗೆ ಮತ್ತು ಬೇಡಿ ತಿನ್ನುವವರಿಗೆ ತಿನ್ನಿಸಿರಿ. ಈ ರೀತಿ ನಾವು ಅವುಗಳನ್ನು ನಿಮಗೆ ಅಧೀನಗೊಳಿಸಿದ್ದೇವೆ. ನೀವು ಕೃತಜ್ಞರಾಗುವುದಕ್ಕಾಗಿ.

وَٱلۡبُدۡنَ جَعَلۡنَٰهَا لَكُم مِّن شَعَٰٓئِرِ ٱللَّهِ لَكُمۡ فِيهَا خَيۡرٞۖ فَٱذۡكُرُواْ ٱسۡمَ ٱللَّهِ عَلَيۡهَا صَوَآفَّۖ فَإِذَا وَجَبَتۡ جُنُوبُهَا فَكُلُواْ مِنۡهَا وَأَطۡعِمُواْ ٱلۡقَانِعَ وَٱلۡمُعۡتَرَّۚ كَذَٰلِكَ سَخَّرۡنَٰهَا لَكُمۡ لَعَلَّكُمۡ تَشۡكُرُونَ ٣٦

37. ಅವುಗಳ ಮಾಂಸ ಅಥವಾ ರಕ್ತ ಅಲ್ಲಾಹನಿಗೆ ತಲುಪುವುದಿಲ್ಲ. ಆದರೆ ನಿಮ್ಮಲ್ಲಿರುವ ದೇವಭಯವು ಅವನಿಗೆ ತಲುಪುತ್ತದೆ. ಈ ರೀತಿ ಅವನು ಅವುಗಳನ್ನು ನಿಮಗೆ ಅಧೀನಗೊಳಿಸಿದ್ದಾನೆ. ಅಲ್ಲಾಹು ನಿಮಗೆ ಸನ್ಮಾರ್ಗವನ್ನು ತೋರಿಸಿದ್ದಕ್ಕಾಗಿ ನೀವು ಅವನ ಮಹತ್ವವನ್ನು ಕೊಂಡಾಡಲು. ಒಳಿತು ಮಾಡುವವರಿಗೆ ಸುವಾರ್ತೆಯನ್ನು ತಿಳಿಸಿರಿ.

لَن يَنَالَ ٱللَّهَ لُحُومُهَا وَلَا دِمَآؤُهَا وَلَٰكِن
يَنَالُهُ ٱلتَّقْوَىٰ مِنكُمْۚ كَذَٰلِكَ سَخَّرَهَا
لَكُمْ لِتُكَبِّرُوا۟ ٱللَّهَ عَلَىٰ مَا هَدَىٰكُمْۗ وَبَشِّرِ
ٱلْمُحْسِنِينَ ٣٧

38. ನಿಶ್ಚಯವಾಗಿಯೂ ಅಲ್ಲಾಹು ಸತ್ಯವಿಶ್ವಾಸಿಗಳನ್ನು ಅವರ ವೈರಿಗಳಿಂದ ರಕ್ಷಿಸುತ್ತಾನೆ. ವಿಶ್ವಾಸದ್ರೋಹ ಮಾಡುವ ಕೃತಘ್ನನನ್ನು ಅಲ್ಲಾಹು ಖಂಡಿತ ಇಷ್ಟಪಡುವುದಿಲ್ಲ.

إِنَّ ٱللَّهَ يُدَٰفِعُ عَنِ ٱلَّذِينَ ءَامَنُوٓا۟ۗ إِنَّ ٱللَّهَ لَا
يُحِبُّ كُلَّ خَوَّانٍ كَفُورٍ ٣٨

39. ಯಾರ ವಿರುದ್ಧ ವೈರಿಗಳು ಯುದ್ಧ ಸಾರಿದ್ದಾರೋ ಅವರಿಗೂ ಯುದ್ಧ ಮಾಡುವ ಅನುಮತಿ ನೀಡಲಾಗಿದೆ. ಏಕೆಂದರೆ ಅವರು ಮರ್ದಿತರಾಗಿದ್ದಾರೆ. ಅವರಿಗೆ ಸಹಾಯ ಮಾಡುವ ಶಕ್ತಿ ಖಂಡಿತ ಅಲ್ಲಾಹನಿಗಿದೆ.

أُذِنَ لِلَّذِينَ يُقَٰتَلُونَ بِأَنَّهُمْ ظُلِمُوا۟ۚ وَإِنَّ ٱللَّهَ
عَلَىٰ نَصْرِهِمْ لَقَدِيرٌ ٣٩

40. ಅವರು (ಮರ್ದಿತರು) ಯಾರೆಂದರೆ, ಅಲ್ಲಾಹನೇ ನಮ್ಮ ಪರಿಪಾಲಕ ಎಂದು ಹೇಳಿದ ಕಾರಣಕ್ಕಾಗಿ ತಮ್ಮ ಮನೆಗಳಿಂದ ಅನ್ಯಾಯವಾಗಿ ಹೊರಹಾಕಲಾದವರು. ಅಲ್ಲಾಹು ಜನರಲ್ಲಿ ಕೆಲವರನ್ನು ಇತರ ಕೆಲವರ ಮೂಲಕ ತಡೆಯದಿರುತ್ತಿದ್ದರೆ, ಸನ್ಯಾಸಿ ಪೀಠಗಳು, ಚರ್ಚುಗಳು, ಯಹೂದಿಗಳ ಮಂದಿರಗಳು ಮತ್ತು ಅತ್ಯಧಿಕವಾಗಿ ಅಲ್ಲಾಹನ ಹೆಸರನ್ನು ಉಚ್ಚರಿಸಲಾಗುವ ಮಸೀದಿಗಳು ಧ್ವಂಸವಾಗುತ್ತಿದ್ದವು! ಅಲ್ಲಾಹನಿಗೆ ಸಹಾಯ ಮಾಡುವವರಿಗೆ ಅಲ್ಲಾಹು ಖಂಡಿತ ಸಹಾಯ ಮಾಡುತ್ತಾನೆ. ನಿಶ್ಚಯವಾಗಿಯೂ ಅಲ್ಲಾಹು ಬಲಿಷ್ಠನು ಮತ್ತು ಅಜೇಯನಾಗಿದ್ದಾನೆ.

ٱلَّذِينَ أُخْرِجُوا۟ مِن دِيَٰرِهِم بِغَيْرِ حَقٍّ إِلَّآ
أَن يَقُولُوا۟ رَبُّنَا ٱللَّهُۗ وَلَوْلَا دَفْعُ ٱللَّهِ ٱلنَّاسَ
بَعْضَهُم بِبَعْضٍ لَّهُدِّمَتْ صَوَٰمِعُ وَبِيَعٌ
وَصَلَوَٰتٌ وَمَسَٰجِدُ يُذْكَرُ فِيهَا ٱسْمُ ٱللَّهِ
كَثِيرًاۗ وَلَيَنصُرَنَّ ٱللَّهُ مَن يَنصُرُهُۥٓۚ إِنَّ ٱللَّهَ
لَقَوِىٌّ عَزِيزٌ ٤٠

41. ಅವರು (ಮರ್ದಿತರು) ಯಾರೆಂದರೆ, ನಾವು ಅವರಿಗೆ ಭೂಮಿಯಲ್ಲಿ ಅಧಿಕಾರವನ್ನು ನೀಡಿದರೆ ಅವರು ನಮಾಝ್ ಸಂಸ್ಥಾಪಿಸುತ್ತಾರೆ, ಝಕಾತ್ ನೀಡುತ್ತಾರೆ, ಒಳಿತನ್ನು ಆದೇಶಿಸುತ್ತಾರೆ ಮತ್ತು ಕೆಡುಕನ್ನು ವಿರೋಧಿಸುತ್ತಾರೆ. ವಿಷಯಗಳ ಅಂತಿಮ ಫಲಿತಾಂಶವು ಅಲ್ಲಾಹನಿಗೆ ಸೇರಿದೆ.

ٱلَّذِينَ إِن مَّكَّنَّٰهُمْ فِى ٱلْأَرْضِ أَقَامُوا۟ ٱلصَّلَوٰةَ
وَءَاتَوُا۟ ٱلزَّكَوٰةَ وَأَمَرُوا۟ بِٱلْمَعْرُوفِ وَنَهَوْا۟ عَنِ
ٱلْمُنكَرِۗ وَلِلَّهِ عَٰقِبَةُ ٱلْأُمُورِ ٤١

42. (ಪ್ರವಾದಿಯವರೇ) ಅವರು ನಿಮ್ಮನ್ನು ನಿಷೇಧಿಸಿದರೆ (ಅದರಲ್ಲಿ ಅತಿಶಯೋಕ್ತಿಯಿಲ್ಲ). ಅವರಿಗಿಂತ ಮೊದಲು ಜೀವಿಸಿದ್ದ ನೂಹರ ಜನರು, ಆದ್ ಮತ್ತು ಸಮೂದ್ ಗೋತ್ರದವರು ಕೂಡ ಪ್ರವಾದಿಗಳನ್ನು ನಿಷೇಧಿಸಿದ್ದರು.

وَإِن يُكَذِّبُوكَ فَقَدْ كَذَّبَتْ قَبْلَهُمْ قَوْمُ نُوحٍ
وَعَادٌ وَثَمُودُ ٤٢

43. ಇಬ್ರಾಹೀಮರ ಜನರು ಮತ್ತು ಲೂತರ ಜನರು ಕೂಡ (ಪ್ರವಾದಿಗಳನ್ನು ನಿಷೇಧಿಸಿದ್ದರು).

وَقَوۡمُ إِبۡرَٰهِيمَ وَقَوۡمُ لُوطٖ ﴿٤٣﴾

44. ಮದ್‌ಯನ್ ನಿವಾಸಿಗಳು ಕೂಡ (ಪ್ರವಾದಿಗಳನ್ನು ನಿಷೇಧಿಸಿದ್ದರು). ಮೂಸಾರನ್ನು ಕೂಡ ನಿಷೇಧಿಸಲಾಗಿತ್ತು. ಆದ್ದರಿಂದ, ನಾನು ಸತ್ಯನಿಷೇಧಿಗಳಿಗೆ ಅವಧಿಯನ್ನು ವಿಸ್ತರಿಸಿಕೊಟ್ಟು ನಂತರ ಅವರನ್ನು ಹಿಡಿದೆನು. ಆಗ ನನ್ನ ಶಿಕ್ಷೆಯು ಹೇಗಿತ್ತು!

وَأَصۡحَٰبُ مَدۡيَنَۖ وَكُذِّبَ مُوسَىٰۖ فَأَمۡلَيۡتُ لِلۡكَٰفِرِينَ ثُمَّ أَخَذۡتُهُمۡۖ فَكَيۡفَ كَانَ نَكِيرِ ﴿٤٤﴾

45. ನಾವು ಎಷ್ಟೋ ಊರುಗಳನ್ನು ಅವುಗಳ ನಿವಾಸಿಗಳು ಅಕ್ರಮವೆಸಗಿದಾಗ ನಾಶ ಮಾಡಿದ್ದೆವು. ಅವೆಲ್ಲವೂ ಛಾವಣಿ ಸಹಿತ ಕುಸಿದು ಬಿದ್ದವು. ಎಷ್ಟೋ ಬಾವಿಗಳು ಪಾಳು ಬಿದ್ದಿವೆ! ಎಷ್ಟೋ ಎತ್ತರೆತ್ತರದ ಮಹಲುಗಳು ನಿರ್ಜನವಾಗಿವೆ!

فَكَأَيِّن مِّن قَرۡيَةٍ أَهۡلَكۡنَٰهَا وَهِيَ ظَالِمَةٞ فَهِيَ خَاوِيَةٌ عَلَىٰ عُرُوشِهَا وَبِئۡرٖ مُّعَطَّلَةٖ وَقَصۡرٖ مَّشِيدٍ ﴿٤٥﴾

46. ಅವರು ಭೂಮಿಯಲ್ಲಿ ಸಂಚರಿಸುವುದಿಲ್ಲವೇ? ಹಾಗಾದರೆ ಅವರಿಗೆ ಆಲೋಚಿಸುವ ಹೃದಯಗಳು ಅಥವಾ ಕೇಳುವ ಕಿವಿಗಳು ಇರುತ್ತಿದ್ದವು. ಏಕೆಂದರೆ, ಕುರುಡಾಗುವುದು ಕೇವಲ ಕಣ್ಣುಗಳು ಮಾತ್ರವಲ್ಲ, ಎದೆಗಳೊಳಗಿರುವ ಹೃದಯಗಳು ಕೂಡ ಕುರುಡಾಗುತ್ತವೆ.

أَفَلَمۡ يَسِيرُواْ فِي ٱلۡأَرۡضِ فَتَكُونَ لَهُمۡ قُلُوبٞ يَعۡقِلُونَ بِهَآ أَوۡ ءَاذَانٞ يَسۡمَعُونَ بِهَاۖ فَإِنَّهَا لَا تَعۡمَى ٱلۡأَبۡصَٰرُ وَلَٰكِن تَعۡمَى ٱلۡقُلُوبُ ٱلَّتِي فِي ٱلصُّدُورِ ﴿٤٦﴾

47. ಅವರು ನಿಮ್ಮೊಡನೆ ಶಿಕ್ಷೆಗಾಗಿ ತ್ವರೆ ಮಾಡುತ್ತಾರೆ. ಆದರೆ ಅಲ್ಲಾಹು ತನ್ನ ವಾಗ್ದಾನವನ್ನು ಎಂದಿಗೂ ಉಲ್ಲಂಘಿಸುವುದಿಲ್ಲ. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನ (ಅಲ್ಲಾಹನ) ಬಳಿ ಒಂದು ದಿನವೆಂದರೆ ನಿಮ್ಮ ಎಣಿಕೆಯಂತೆ ಸಾವಿರ ವರ್ಷಗಳಾಗಿವೆ.

وَيَسۡتَعۡجِلُونَكَ بِٱلۡعَذَابِ وَلَن يُخۡلِفَ ٱللَّهُ وَعۡدَهُۥۚ وَإِنَّ يَوۡمًا عِندَ رَبِّكَ كَأَلۡفِ سَنَةٖ مِّمَّا تَعُدُّونَ ﴿٤٧﴾

48. ನಾನು ಎಷ್ಟೋ ಊರುಗಳಿಗೆ ಅವುಗಳ ನಿವಾಸಿಗಳು ಅಕ್ರಮವೆಸಗಿದಾಗ ಕಾಲಾವಕಾಶವನ್ನು ವಿಸ್ತರಿಸಿಕೊಟ್ಟಿದ್ದೆನು. ನಂತರ ಅವರನ್ನು ಹಿಡಿದೆನು. ಎಲ್ಲರೂ ಮರಳಿ ಬರುವುದು ನನ್ನ ಬಳಿಗೇ ಆಗಿದೆ.

وَكَأَيِّن مِّن قَرۡيَةٍ أَمۡلَيۡتُ لَهَا وَهِيَ ظَالِمَةٞ ثُمَّ أَخَذۡتُهَا وَإِلَيَّ ٱلۡمَصِيرُ ﴿٤٨﴾

49. ಹೇಳಿರಿ: “ಓ ಜನರೇ! ನಿಶ್ಚಯವಾಗಿಯೂ ನಾನು ನಿಮಗೆ ಸ್ಪಷ್ಟವಾಗಿ ಎಚ್ಚರಿಕೆ ನೀಡುವವನಾಗಿದ್ದೇನೆ.”

قُلۡ يَٰٓأَيُّهَا ٱلنَّاسُ إِنَّمَآ أَنَا۠ لَكُمۡ نَذِيرٞ مُّبِينٞ ﴿٤٩﴾

50. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ ಅವರಿಗೆ ಕ್ಷಮೆ ಮತ್ತು ಗೌರವಾನ್ವಿತ ಆಹಾರವಿದೆ.

فَٱلَّذِينَ ءَامَنُواْ وَعَمِلُواْ ٱلصَّٰلِحَٰتِ لَهُم مَّغۡفِرَةٞ وَرِزۡقٞ كَرِيمٞ ﴿٥٠﴾

51. ನಮ್ಮ ದೃಷ್ಟಾಂತಗಳನ್ನು ವಿರೂಪಗೊಳಿಸಲು ಪ್ರಯತ್ನಿಸುವವರು ಯಾರೋ ಅವರೇ ನರಕವಾಸಿಗಳು.

وَٱلَّذِينَ سَعَوۡاْ فِيٓ ءَايَٰتِنَا مُعَٰجِزِينَ أُوْلَٰٓئِكَ أَصۡحَٰبُ ٱلۡجَحِيمِ ﴿٥١﴾

52. ನಾವು ನಿಮಗಿಂತ ಮೊದಲು ಕಳುಹಿಸಿದ ಯಾವುದೇ ಸಂದೇಶವಾಹಕರು ಮತ್ತು ಪ್ರವಾದಿಗಳು ಮಾತನಾಡುವಾಗ (ಅಲ್ಲಾಹನ ಗ್ರಂಥವನ್ನು ಓದಿಕೊಡುವಾಗ), ಶೈತಾನನು ಅದಕ್ಕೆ ಕೆಲವು ದುರ್ವಿಚಾರಗಳನ್ನು ಸೇರಿಸುತ್ತಿದ್ದನು. ಆದರೆ ಶೈತಾನನು ಸೇರಿಸಿದ್ದನ್ನು ಅಲ್ಲಾಹು ಅಳಿಸಿ ಹಾಕುತ್ತಿದ್ದನು. ನಂತರ ಅಲ್ಲಾಹು ತನ್ನ ವಚನಗಳನ್ನು ಪ್ರಬಲಗೊಳಿಸುತ್ತಿದ್ದನು. ಅಲ್ಲಾಹು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ.[1]

وَمَآ أَرۡسَلۡنَا مِن قَبۡلِكَ مِن رَّسُولٖ وَلَا نَبِيٍّ إِلَّآ إِذَا تَمَنَّىٰٓ أَلۡقَى ٱلشَّيۡطَٰنُ فِيٓ أُمۡنِيَّتِهِۦ فَيَنسَخُ ٱللَّهُ مَا يُلۡقِي ٱلشَّيۡطَٰنُ ثُمَّ يُحۡكِمُ ٱللَّهُ ءَايَٰتِهِۦۗ وَٱللَّهُ عَلِيمٌ حَكِيمٞ ٥٢

53. ಶೈತಾನನು ಸೇರಿಸಿದ್ದನ್ನು ಹೃದಯಗಳಲ್ಲಿ ರೋಗವಿರುವವರಿಗೆ ಮತ್ತು ಕಠೋರ ಹೃದಯಿಗಳಿಗೆ ಒಂದು ಪರೀಕ್ಷೆಯಾಗಿ ಮಾಡಲು. ನಿಶ್ಚಯವಾಗಿಯೂ ಅಕ್ರಮಿಗಳು ಆಳವಾದ ವಿರೋಧದಲ್ಲಿದ್ದಾರೆ.

لِّيَجۡعَلَ مَا يُلۡقِي ٱلشَّيۡطَٰنُ فِتۡنَةٗ لِّلَّذِينَ فِي قُلُوبِهِم مَّرَضٞ وَٱلۡقَاسِيَةِ قُلُوبُهُمۡۗ وَإِنَّ ٱلظَّٰلِمِينَ لَفِي شِقَاقِۭ بَعِيدٖ ٥٣

54. ಅದೇ ರೀತಿ ಜ್ಞಾನ ನೀಡಲಾದವರು ಅದು ತಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಸತ್ಯವೆಂದು ತಿಳಿದು ಅದರಲ್ಲಿ ವಿಶ್ವಾಸವಿಡಲು, ಮತ್ತು ಅವರ ಹೃದಯಗಳು ಅದಕ್ಕೆ ಶರಣಾಗಲು. ನಿಶ್ಚಯವಾಗಿಯೂ ಅಲ್ಲಾಹು ಸತ್ಯವಿಶ್ವಾಸಿಗಳನ್ನು ನೇರಮಾರ್ಗಕ್ಕೆ ಮುನ್ನಡೆಸುತ್ತಾನೆ.

وَلِيَعۡلَمَ ٱلَّذِينَ أُوتُواْ ٱلۡعِلۡمَ أَنَّهُ ٱلۡحَقُّ مِن رَّبِّكَ فَيُؤۡمِنُواْ بِهِۦ فَتُخۡبِتَ لَهُۥ قُلُوبُهُمۡۗ وَإِنَّ ٱللَّهَ لَهَادِ ٱلَّذِينَ ءَامَنُوٓاْ إِلَىٰ صِرَٰطٖ مُّسۡتَقِيمٖ ٥٤

55. ಅಂತ್ಯಸಮಯವು ಅವರ ಬಳಿಗೆ ಹಠಾತ್ತನೆ ಬರುವ ತನಕ ಅಥವಾ ವಿನಾಶಕಾರಿ ದಿನದ ಶಿಕ್ಷೆಯು ಅವರ ಬಳಿಗೆ ಬರುವ ತನಕ ಸತ್ಯನಿಷೇಧಿಗಳು ಅದರ ಬಗ್ಗೆ ಸಂಶಯದಲ್ಲೇ ಇರುವರು.

وَلَا يَزَالُ ٱلَّذِينَ كَفَرُواْ فِي مِرۡيَةٖ مِّنۡهُ حَتَّىٰ تَأۡتِيَهُمُ ٱلسَّاعَةُ بَغۡتَةً أَوۡ يَأۡتِيَهُمۡ عَذَابُ يَوۡمٍ عَقِيمٍ ٥٥

56. ಅಂದು ಸಾರ್ವಭೌಮತ್ವವು ಸಂಪೂರ್ಣವಾಗಿ ಅಲ್ಲಾಹನಿಗಾಗಿದೆ. ಅವನು ಅವರ ಮಧ್ಯೆ ತೀರ್ಪು ನೀಡುವನು. ಸತ್ಯವಿಶ್ವಾ-ಸಿಗಳು ಮತ್ತು ಸತ್ಕರ್ಮವೆಸಗಿದವರು ಸುಖಸಮೃದ್ಧವಾದ ಸ್ವರ್ಗಗಳಲ್ಲಿರುವರು.

ٱلۡمُلۡكُ يَوۡمَئِذٖ لِّلَّهِ يَحۡكُمُ بَيۡنَهُمۡۚ فَٱلَّذِينَ ءَامَنُواْ وَعَمِلُواْ ٱلصَّٰلِحَٰتِ فِي جَنَّٰتِ ٱلنَّعِيمِ ٥٦

57. ಸತ್ಯನಿಷೇಧಿಗಳು ಮತ್ತು ನಮ್ಮ ದೃಷ್ಟಾಂತಗಳನ್ನು ನಿಷೇಧಿಸಿದವರು ಯಾರೋ—ಅವರಿಗೆ ಅವಮಾನಕರ ಶಿಕ್ಷೆಯಿದೆ.

وَٱلَّذِينَ كَفَرُواْ وَكَذَّبُواْ بِـَٔايَٰتِنَا فَأُوْلَٰٓئِكَ لَهُمۡ عَذَابٞ مُّهِينٞ ٥٧

58. ಅಲ್ಲಾಹನ ಮಾರ್ಗದಲ್ಲಿ ವಲಸೆ (ಹಿಜ್ರ) ಮಾಡಿದವರು, ನಂತರ ಹುತಾತ್ಮರಾದವರು ಅಥವಾ ನಿಧನರಾದವರು ಯಾರೋ—ನಿಶ್ಚಯವಾಗಿಯೂ ಅಲ್ಲಾಹು ಅವರಿಗೆ ಅತ್ಯುತ್ತಮ

وَٱلَّذِينَ هَاجَرُواْ فِي سَبِيلِ ٱللَّهِ ثُمَّ قُتِلُوٓاْ أَوۡ مَاتُواْ لَيَرۡزُقَنَّهُمُ ٱللَّهُ رِزۡقًا حَسَنٗاۚ وَإِنَّ ٱللَّهَ لَهُوَ

[1] ಅಂದರೆ ಪ್ರವಾದಿಗಳು (ಅವರ ಮೇಲೆ ಶಾಂತಿಯಿರಲಿ) ದೇವವಾಣಿಯ ಆಧಾರದಲ್ಲಿ ಮಾತನಾಡುವಾಗ, ಅಥವಾ ಅಲ್ಲಾಹನ ಗ್ರಂಥದ ವಚನಗಳನ್ನು ಓದಿಕೊಡುವಾಗ, ಶೈತಾನನು ಅವರ ಮಾತಿನಲ್ಲಿ ತನ್ನ ಮಾತನ್ನು ಸೇರಿಸಲು, ಅಥವಾ ಅಲ್ಲಾಹನ ವಚನಕ್ಕೆ ತನ್ನ ವಚನಗಳನ್ನು ಸೇರಿಸಲು, ಅಥವಾ ಅದನ್ನು ಓದಿಕೊಡುವಾಗ ಜನರ ಮನದಲ್ಲಿ ದುರ್ವಿಚಾರಗಳನ್ನು ಹುಟ್ಟಿಸಲು ಪ್ರಯತ್ನಿಸುತ್ತಿದ್ದನು. ಆದರೆ ಅಲ್ಲಾಹು ಶೈತಾನನ ಈ ಎಲ್ಲಾ ಪ್ರಯತ್ನಗಳನ್ನು ವಿಫಲಗೊಳಿಸಿ ತನ್ನ ವಚನಗಳನ್ನು ಬಲಿಷ್ಠಗೊಳಿಸುತ್ತಿದ್ದನು.

| | | |
|---|---|---|
| | ಉಪಜೀವನವನ್ನು ಒದಗಿಸುವನು. ನಿಶ್ಚಯವಾಗಿಯೂ ಉಪಜೀವನ ಒದಗಿಸುವವರಲ್ಲಿ ಅಲ್ಲಾಹು ಅತಿಶ್ರೇಷ್ಠನಾಗಿದ್ದಾನೆ. | خَيۡرُ ٱلرَّٰزِقِينَ ٥٨ |
| 59. | ನಿಶ್ಚಯವಾಗಿಯೂ ಅವರಿಗೆ ಸಂತೃಪ್ತಿ ನೀಡುವ ಸ್ಥಳಕ್ಕೆ ಅಲ್ಲಾಹು ಅವರನ್ನು ಪ್ರವೇಶ ಮಾಡಿಸುವನು. ನಿಶ್ಚಯವಾಗಿಯೂ ಅಲ್ಲಾಹು ಸರ್ವಜ್ಞನು ಮತ್ತು ಸಹಿಷ್ಣುತೆಯುಳ್ಳವನಾಗಿದ್ದಾನೆ. | لَيُدۡخِلَنَّهُم مُّدۡخَلٗا يَرۡضَوۡنَهُۥۚ وَإِنَّ ٱللَّهَ لَعَلِيمٌ حَلِيمٞ ٥٩ |
| 60. | ಅದು.[1] ಒಬ್ಬನು ತನ್ನ ಮೇಲೆ ನಡೆದ ದಬ್ಬಾಳಿಕೆಗೆ ಸಮಾನವಾದ ಪ್ರತೀಕಾರವನ್ನು ಪಡೆದಾಗ, ದಬ್ಬಾಳಿಕೆ ಮಾಡಿದವನು ಅವನ ಮೇಲೆ ಪುನಃ ಅತಿರೇಕವೆಸಗಿದರೆ ಅಲ್ಲಾಹು ಖಂಡಿತ ಅವನಿಗೆ ಸಹಾಯ ಮಾಡುವನು. ನಿಶ್ಚಯವಾಗಿಯೂ ಅಲ್ಲಾಹು ಮನ್ನಿಸುವವನು ಮತ್ತು ಕ್ಷಮಿಸುವವನಾಗಿದ್ದಾನೆ. | ذَٰلِكَۖ وَمَنۡ عَاقَبَ بِمِثۡلِ مَا عُوقِبَ بِهِۦ ثُمَّ بُغِيَ عَلَيۡهِ لَيَنصُرَنَّهُ ٱللَّهُۚ إِنَّ ٱللَّهَ لَعَفُوٌّ غَفُورٞ ٦٠ |
| 61. | ಅದೇಕೆಂದರೆ ಅಲ್ಲಾಹು ರಾತ್ರಿಯನ್ನು ಹಗಲಿನಲ್ಲಿ ಪ್ರವೇಶ ಮಾಡಿಸುತ್ತಾನೆ ಮತ್ತು ಹಗಲನ್ನು ರಾತ್ರಿಯಲ್ಲಿ ಪ್ರವೇಶ ಮಾಡಿಸುತ್ತಾನೆ. ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ನೋಡುವವನಾಗಿದ್ದಾನೆ. | ذَٰلِكَ بِأَنَّ ٱللَّهَ يُولِجُ ٱلَّيۡلَ فِي ٱلنَّهَارِ وَيُولِجُ ٱلنَّهَارَ فِي ٱلَّيۡلِ وَأَنَّ ٱللَّهَ سَمِيعُۢ بَصِيرٞ ٦١ |
| 62. | ಅದೇಕೆಂದರೆ ಅಲ್ಲಾಹನೇ ಸತ್ಯ. ಅವನನ್ನು ಬಿಟ್ಟು ಅವರು ಕರೆದು ಪ್ರಾರ್ಥಿಸುತ್ತಿರುವ ದೇವರುಗಳೆಲ್ಲವೂ ಮಿಥ್ಯ. ಅಲ್ಲಾಹು ಅತ್ಯುನ್ನತನು ಮತ್ತು ಮಹಾನನಾಗಿದ್ದಾನೆ. | ذَٰلِكَ بِأَنَّ ٱللَّهَ هُوَ ٱلۡحَقُّ وَأَنَّ مَا يَدۡعُونَ مِن دُونِهِۦ هُوَ ٱلۡبَٰطِلُ وَأَنَّ ٱللَّهَ هُوَ ٱلۡعَلِيُّ ٱلۡكَبِيرُ ٦٢ |
| 63. | ಅಲ್ಲಾಹು ಆಕಾಶದಿಂದ ಮಳೆಯನ್ನು ಸುರಿಸಿ, ಅದರಿಂದ ಭೂಮಿಯು ಹಸಿರಾಗಿ ಕಂಗೊಳಿಸುವುದನ್ನು ನೀವು ನೋಡಿಲ್ಲವೇ? ನಿಶ್ಚಯವಾಗಿಯೂ ಅಲ್ಲಾಹು ಸಹಾನುಭೂತಿ-ಯುಳ್ಳವನು ಮತ್ತು ಸೂಕ್ಷ್ಮಜ್ಞಾನಿಯಾಗಿದ್ದಾನೆ. | أَلَمۡ تَرَ أَنَّ ٱللَّهَ أَنزَلَ مِنَ ٱلسَّمَآءِ مَآءٗ فَتُصۡبِحُ ٱلۡأَرۡضُ مُخۡضَرَّةًۚ إِنَّ ٱللَّهَ لَطِيفٌ خَبِيرٞ ٦٣ |
| 64. | ಭೂಮ್ಯಾಕಾಶಗಳಲ್ಲಿರುವ ಎಲ್ಲವೂ ಅವನಿಗೆ ಸೇರಿದ್ದು. ನಿಶ್ಚಯವಾಗಿಯೂ ಅಲ್ಲಾಹು ನಿರಪೇಕ್ಷನು ಮತ್ತು ಸ್ತುತ್ಯರ್ಹನಾಗಿದ್ದಾನೆ. | لَّهُۥ مَا فِي ٱلسَّمَٰوَٰتِ وَمَا فِي ٱلۡأَرۡضِۚ وَإِنَّ ٱللَّهَ لَهُوَ ٱلۡغَنِيُّ ٱلۡحَمِيدُ ٦٤ |
| 65. | ಭೂಮಿಯಲ್ಲಿರುವ ಎಲ್ಲಾ ವಸ್ತುಗಳನ್ನು ಅಲ್ಲಾಹು ನಿಮಗೆ ನಿಯಂತ್ರಿಸಿಕೊಟ್ಟಿದ್ದಾನೆ ಎಂಬುದನ್ನು ನೀವು ನೋಡುವುದಿಲ್ಲವೇ? ಅವನ ಆಜ್ಞೆಯಂತೆ ಸಮುದ್ರದಲ್ಲಿ ಸಂಚರಿಸುವ ನಾವೆಗಳನ್ನು ಕೂಡ (ಅವನು ನಿಯಂತ್ರಿಸಿಕೊಟ್ಟಿದ್ದಾನೆ). ಆಕಾಶವು ಅವನ ಅಪ್ಪಣೆಯಿಲ್ಲದೆ ಭೂಮಿಯ ಮೇಲೆ ಬೀಳದಂತೆ ಅವನು | أَلَمۡ تَرَ أَنَّ ٱللَّهَ سَخَّرَ لَكُم مَّا فِي ٱلۡأَرۡضِ وَٱلۡفُلۡكَ تَجۡرِي فِي ٱلۡبَحۡرِ بِأَمۡرِهِۦ وَيُمۡسِكُ ٱلسَّمَآءَ أَن تَقَعَ عَلَى ٱلۡأَرۡضِ إِلَّا بِإِذۡنِهِۦٓۚ إِنَّ ٱللَّهَ بِٱلنَّاسِ لَرَءُوفٞ رَّحِيمٞ ٦٥ |

[1] ಅಂದರೆ ಅಲ್ಲಾಹನ ಮಾರ್ಗದಲ್ಲಿ ವಲಸೆ (ಹಿಜ್ರ) ಮಾಡಿ ನಂತರ ಹುತಾತ್ಮರಾದವರು ಅಥವಾ ಸ್ವಾಭಾವಿಕ ರೀತಿಯಲ್ಲಿ ನಿಧನರಾದವರು ಯಾರೋ ಅವರಿಗೆ ನಾವು ನೀಡಿದ ವಾಗ್ದಾನವು ಖಂಡಿತವಾಗಿಯೂ ನೆರವೇರುತ್ತದೆ.

ಅದನ್ನು ಆಧರಿಸಿ ಹಿಡಿದಿದ್ದಾನೆ. ನಿಶ್ಚಯವಾಗಿಯೂ ಅಲ್ಲಾಹು ಜನರ ಮೇಲೆ ಅತ್ಯಂತ ಅನುಕಂಪವಿರುವವನು ಮತ್ತು ದಯೆ ತೋರುವವನಾಗಿದ್ದಾನೆ.

---

66. ನಿಮಗೆ ಜೀವ ನೀಡಿದವನು ಅವನೇ. ನಂತರ ಅವನು ನಿಮ್ಮನ್ನು ಮೃತಪಡಿಸುತ್ತಾನೆ. ನಂತರ ನಿಮಗೆ ಪುನಃ ಜೀವ ನೀಡುತ್ತಾನೆ. ನಿಶ್ಚಯವಾಗಿಯೂ ಮನುಷ್ಯನು ಅತ್ಯಂತ ಕೃತಘ್ನನಾಗಿದ್ದಾನೆ.

وَهُوَ ٱلَّذِىٓ أَحۡيَاكُمۡ ثُمَّ يُمِيتُكُمۡ ثُمَّ يُحۡيِيكُمۡۗ إِنَّ ٱلۡإِنسَٰنَ لَكَفُورٞ ٦٦

---

67. ನಾವು ಪ್ರತಿಯೊಂದು ಸಮುದಾಯಕ್ಕೂ ಆರಾಧನಾ ವಿಧಾನವನ್ನು ನಿಶ್ಚಯಿಸಿದ್ದೇವೆ. ಅವರು ಅದನ್ನೇ ಪಾಲಿಸುತ್ತಾರೆ. ಆದ್ದರಿಂದ ಅವರು ಈ ವಿಷಯದಲ್ಲಿ ನಿಮ್ಮೊಂದಿಗೆ ತರ್ಕ ಮಾಡಬಾರದು. ನೀವು ನಿಮ್ಮ ಪರಿಪಾಲಕನ (ಅಲ್ಲಾಹನ) ಮಾರ್ಗಕ್ಕೆ ಅವರನ್ನು ಕರೆಯಿರಿ. ನಿಶ್ಚಯವಾಗಿಯೂ ನೀವು ನೇರವಾದ ಮಾರ್ಗದಲ್ಲಿದ್ದೀರಿ.

لِّكُلِّ أُمَّةٖ جَعَلۡنَا مَنسَكًا هُمۡ نَاسِكُوهُۖ فَلَا يُنَٰزِعُنَّكَ فِى ٱلۡأَمۡرِۚ وَٱدۡعُ إِلَىٰ رَبِّكَۖ إِنَّكَ لَعَلَىٰ هُدٗى مُّسۡتَقِيمٖ ٦٧

---

68. ಅವರು ನಿಮ್ಮೊಂದಿಗೆ ತರ್ಕ ಮಾಡಿದರೆ, ಹೇಳಿರಿ: “ನೀವು ಮಾಡುವ ಕರ್ಮಗಳ ಬಗ್ಗೆ ಅಲ್ಲಾಹು ಬಹಳ ಚೆನ್ನಾಗಿ ತಿಳಿದಿದ್ದಾನೆ.

وَإِن جَٰدَلُوكَ فَقُلِ ٱللَّهُ أَعۡلَمُ بِمَا تَعۡمَلُونَ ٦٨

---

69. ನೀವು ಭಿನ್ನಾಭಿಪ್ರಾಯದಲ್ಲಿರುವ ವಿಷಯದಲ್ಲಿ ಅಲ್ಲಾಹು ಪುನರುತ್ಥಾನ ದಿನದಂದು ನಿಮ್ಮ ನಡುವೆ ತೀರ್ಪು ನೀಡುತ್ತಾನೆ.”

ٱللَّهُ يَحۡكُمُ بَيۡنَكُمۡ يَوۡمَ ٱلۡقِيَٰمَةِ فِيمَا كُنتُمۡ فِيهِ تَخۡتَلِفُونَ ٦٩

---

70. ಭೂಮ್ಯಾಕಾಶದಲ್ಲಿರುವುದನ್ನು ಅಲ್ಲಾಹು ತಿಳಿಯುತ್ತಾನೆಂದು ನಿಮಗೆ ಗೊತ್ತಿಲ್ಲವೇ? ನಿಶ್ಚಯವಾಗಿಯೂ ಅವೆಲ್ಲವೂ ಒಂದು ಗ್ರಂಥದಲ್ಲಿದೆ. ನಿಶ್ಚಯವಾಗಿಯೂ ಅಲ್ಲಾಹನಿಗೆ ಅದು ಬಹಳ ಸುಲಭದ ವಿಷಯವಾಗಿದೆ.

أَلَمۡ تَعۡلَمۡ أَنَّ ٱللَّهَ يَعۡلَمُ مَا فِى ٱلسَّمَآءِ وَٱلۡأَرۡضِۚ إِنَّ ذَٰلِكَ فِى كِتَٰبٍۚ إِنَّ ذَٰلِكَ عَلَى ٱللَّهِ يَسِيرٞ ٧٠

---

71. ಅವರು ಅಲ್ಲಾಹನನ್ನು ಬಿಟ್ಟು ಅವನು ಯಾವುದೇ ಸಾಕ್ಷ್ಯಾಧಾ-ರವನ್ನು ಇಳಿಸದವರನ್ನು ಆರಾಧಿಸುತ್ತಿದ್ದಾರೆ. ಅವರಿಗೂ ಸಹ ಅದರ ಬಗ್ಗೆ ಯಾವುದೇ ಜ್ಞಾನವಿಲ್ಲ. ಅಕ್ರಮಿಗಳಿಗೆ ಯಾವುದೇ ಸಹಾಯಕರಿಲ್ಲ.

وَيَعۡبُدُونَ مِن دُونِ ٱللَّهِ مَا لَمۡ يُنَزِّلۡ بِهِۦ سُلۡطَٰنٗا وَمَا لَيۡسَ لَهُم بِهِۦ عِلۡمٞۗ وَمَا لِلظَّٰلِمِينَ مِن نَّصِيرٖ ٧١

---

72. ನಮ್ಮ ಸ್ಪಷ್ಟ ವಚನಗಳನ್ನು ಅವರಿಗೆ ಓದಿಕೊಡಲಾದರೆ, ಸತ್ಯನಿಷೇಧಿಗಳ ಮುಖಗಳಲ್ಲಿ ಅತೃಪ್ತಿ ವ್ಯಕ್ತವಾಗುವುದನ್ನು ಕಾಣಬಹುದು. ಅವರಿಗೆ ನಮ್ಮ ವಚನಗಳನ್ನು ಓದಿಕೊಡುವವರ ಮೇಲೆ ಹಲ್ಲೆ ಮಾಡುವಷ್ಟರ ಮಟ್ಟಿಗೆ ಅವರು ತಲುಪುತ್ತಾರೆ. ಹೇಳಿರಿ: “ಅದಕ್ಕಿಂತಲೂ ನಿಕೃಷ್ಟವಾದ ವಿಷಯವನ್ನು ನಾನು ನಿಮಗೆ ತಿಳಿಸಿಕೊಡಲೇ? ನರಕಾಗ್ನಿ! ಅಲ್ಲಾಹು ಅದನ್ನು ಸತ್ಯನಿಷೇಧಿಗಳಿಗೆ ವಾಗ್ದಾನ ಮಾಡಿದ್ದಾನೆ. ಅದು ಬಹಳ ನಿಕೃಷ್ಟ ಗಮ್ಯಸ್ಥಾನವಾಗಿದೆ.”

وَإِذَا تُتۡلَىٰ عَلَيۡهِمۡ ءَايَٰتُنَا بَيِّنَٰتٖ تَعۡرِفُ فِى وُجُوهِ ٱلَّذِينَ كَفَرُواْ ٱلۡمُنكَرَۖ يَكَادُونَ يَسۡطُونَ بِٱلَّذِينَ يَتۡلُونَ عَلَيۡهِمۡ ءَايَٰتِنَاۗ قُلۡ أَفَأُنَبِّئُكُم بِشَرّٖ مِّن ذَٰلِكُمُۚ ٱلنَّارُ وَعَدَهَا ٱللَّهُ ٱلَّذِينَ كَفَرُواْۖ وَبِئۡسَ ٱلۡمَصِيرُ ٧٢

73. ಓ ಮನುಷ್ಯರೇ! ನಿಮಗೆ ಒಂದು ಉದಾಹರಣೆಯನ್ನು ನೀಡಲಾಗುತ್ತಿದೆ. ಅದನ್ನು ಕಿವಿಗೊಟ್ಟು ಕೇಳಿರಿ. ನೀವು ಅಲ್ಲಾಹನನ್ನು ಬಿಟ್ಟು ಯಾರನ್ನು ಕರೆದು ಪ್ರಾರ್ಥಿಸುತ್ತಿದ್ದೀರೋ ಅವರಿಗೆ ಒಂದು ನೊಣವನ್ನು ಕೂಡ ಸೃಷ್ಟಿಸುವ ಶಕ್ತಿಯಿಲ್ಲ. ಅದಕ್ಕಾಗಿ ಅವರೆಲ್ಲರೂ ಒಟ್ಟುಗೂಡಿದರೂ ಸಹ! ನೊಣವು ಅವರಿಂದ ಏನಾದರೂ ಕಸಿದುಕೊಂಡರೆ, ಅದನ್ನು ಆ ನೊಣದಿಂದ ವಾಪಸು ಪಡೆಯಲು ಅವರಿಗೆ ಸಾಧ್ಯವಾಗುವುದಿಲ್ಲ. ಪ್ರಾರ್ಥಿಸುವವನು ಎಷ್ಟು ಬಲಹೀನನು! ಪ್ರಾರ್ಥಿಸಲಾಗುವವನು ಕೂಡ ಎಷ್ಟು ಬಲಹೀನನು!

يَـٰٓأَيُّهَا ٱلنَّاسُ ضُرِبَ مَثَلٌ فَٱسْتَمِعُوا۟ لَهُۥٓ ۚ إِنَّ ٱلَّذِينَ تَدْعُونَ مِن دُونِ ٱللَّهِ لَن يَخْلُقُوا۟ ذُبَابًا وَلَوِ ٱجْتَمَعُوا۟ لَهُۥ ۖ وَإِن يَسْلُبْهُمُ ٱلذُّبَابُ شَيْـًٔا لَّا يَسْتَنقِذُوهُ مِنْهُ ۚ ضَعُفَ ٱلطَّالِبُ وَٱلْمَطْلُوبُ ﴿٧٣﴾

74. ಅವರು ಅಲ್ಲಾಹನನ್ನು ಗಣನೆ ಮಾಡಬೇಕಾದ ರೀತಿಯಲ್ಲಿ ಗಣನೆ ಮಾಡಲಿಲ್ಲ. ನಿಶ್ಚಯವಾಗಿಯೂ ಅಲ್ಲಾಹು ಮಹಾ ಶಕ್ತಿಶಾಲಿ ಮತ್ತು ಪ್ರಬಲನಾಗಿದ್ದಾನೆ.

مَا قَدَرُوا۟ ٱللَّهَ حَقَّ قَدْرِهِۦٓ ۗ إِنَّ ٱللَّهَ لَقَوِىٌّ عَزِيزٌ ﴿٧٤﴾

75. ಅಲ್ಲಾಹು ದೇವದೂತರುಗಳಿಂದ ಮತ್ತು ಮನುಷ್ಯರಿಂದ ಸಂದೇಶವಾಹಕರನ್ನು ಆರಿಸುತ್ತಾನೆ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ನೋಡುವವನಾಗಿದ್ದಾನೆ.

ٱللَّهُ يَصْطَفِى مِنَ ٱلْمَلَـٰٓئِكَةِ رُسُلًا وَمِنَ ٱلنَّاسِ ۚ إِنَّ ٱللَّهَ سَمِيعٌۢ بَصِيرٌ ﴿٧٥﴾

76. ಅವರ ಮುಂದಿರುವುದನ್ನು ಮತ್ತು ಹಿಂದಿರುವುದನ್ನು ಅವನು ತಿಳಿಯುತ್ತಾನೆ. ಎಲ್ಲ ವಿಷಯಗಳೂ ಅಲ್ಲಾಹನ ಬಳಿಗೇ ಮರಳುತ್ತವೆ.

يَعْلَمُ مَا بَيْنَ أَيْدِيهِمْ وَمَا خَلْفَهُمْ ۗ وَإِلَى ٱللَّهِ تُرْجَعُ ٱلْأُمُورُ ﴿٧٦﴾

77. ಸತ್ಯವಿಶ್ವಾಸಿಗಳೇ! ನೀವು ತಲೆಬಾಗಿರಿ, ಸಾಷ್ಟಾಂಗ ಮಾಡಿರಿ, ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಆರಾಧಿಸಿರಿ ಹಾಗೂ ಸತ್ಕರ್ಮಗಳನ್ನು ನಿರ್ವಹಿಸಿರಿ. ನೀವು ಯಶಸ್ವಿಯಾಗುವುದಕ್ಕಾಗಿ.

يَـٰٓأَيُّهَا ٱلَّذِينَ ءَامَنُوا۟ ٱرْكَعُوا۟ وَٱسْجُدُوا۟ وَٱعْبُدُوا۟ رَبَّكُمْ وَٱفْعَلُوا۟ ٱلْخَيْرَ لَعَلَّكُمْ تُفْلِحُونَ ﴿٧٧﴾

78. ಅಲ್ಲಾಹನ ಮಾರ್ಗದಲ್ಲಿ ಪರಿಶ್ರಮಿಸಬೇಕಾದ ರೀತಿಯಲ್ಲೇ ಪರಿಶ್ರಮಿಸಿರಿ. ಅವನು ನಿಮ್ಮನ್ನು ಆರಿಸಿದ್ದಾನೆ. ಅವನು ನಿಮಗೆ ಧರ್ಮದಲ್ಲಿ ಯಾವುದೇ ಕಷ್ಟವನ್ನು ಮಾಡಿಲ್ಲ. ನಿಮ್ಮ ಪಿತಾಮಹರಾದ ಇಬ್ರಾಹೀಮರ ಧರ್ಮ. ಅವನು ಹಿಂದಿನ ಗ್ರಂಥಗಳಲ್ಲಿ ಮತ್ತು ಇದರಲ್ಲಿ (ಕುರ್‌ಆನಿನಲ್ಲಿ) ನಿಮಗೆ ಮುಸಲ್ಮಾನರೆಂದು ಹೆಸರಿಟ್ಟಿದ್ದಾನೆ. ಸಂದೇಶವಾಹಕರು ನಿಮ್ಮ ಮೇಲೆ ಸಾಕ್ಷಿಯಾಗಲು ಮತ್ತು ನೀವು ಜನರ ಮೇಲೆ ಸಾಕ್ಷಿಗಳಾಗಲು. ಆದ್ದರಿಂದ ನೀವು ನಮಾಝ್ ಸಂಸ್ಥಾಪಿಸಿರಿ ಮತ್ತು ಝಕಾತ್ ನೀಡಿರಿ. ಅಲ್ಲಾಹನನ್ನು ಬಿಗಿಯಾಗಿ ಹಿಡಿದುಕೊಳ್ಳಿರಿ. ಅವನೇ ನಿಮ್ಮ ಸಂರಕ್ಷಕ. ಅವನು ಎಷ್ಟು ಉತ್ತಮ ರಕ್ಷಕ! ಎಷ್ಟು ಉತ್ತಮ ಸಹಾಯಕ!

وَجَـٰهِدُوا۟ فِى ٱللَّهِ حَقَّ جِهَادِهِۦ ۚ هُوَ ٱجْتَبَىٰكُمْ وَمَا جَعَلَ عَلَيْكُمْ فِى ٱلدِّينِ مِنْ حَرَجٍ ۚ مِّلَّةَ أَبِيكُمْ إِبْرَٰهِيمَ ۚ هُوَ سَمَّىٰكُمُ ٱلْمُسْلِمِينَ مِن قَبْلُ وَفِى هَـٰذَا لِيَكُونَ ٱلرَّسُولُ شَهِيدًا عَلَيْكُمْ وَتَكُونُوا۟ شُهَدَآءَ عَلَى ٱلنَّاسِ ۚ فَأَقِيمُوا۟ ٱلصَّلَوٰةَ وَءَاتُوا۟ ٱلزَّكَوٰةَ وَٱعْتَصِمُوا۟ بِٱللَّهِ هُوَ مَوْلَىٰكُمْ ۖ فَنِعْمَ ٱلْمَوْلَىٰ وَنِعْمَ ٱلنَّصِيرُ ﴿٧٨﴾

# 23. ಅಲ್-ಮುಅ್‌ಮಿನೂನ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಸತ್ಯವಿಶ್ವಾಸಿಗಳು ಯಶಸ್ವಿಯಾದರು.

قَدۡ أَفۡلَحَ ٱلۡمُؤۡمِنُونَ ١

2. ಅವರು ಯಾರೆಂದರೆ, ತಮ್ಮ ನಮಾಝ್‌ನಲ್ಲಿ ವಿನಮ್ರತೆಯಿರುವವರು.

ٱلَّذِينَ هُمۡ فِي صَلَاتِهِمۡ خَٰشِعُونَ ٢

3. ಅನಗತ್ಯ ವಿಷಯಗಳಿಂದ ವಿಮುಖರಾಗುವವರು.

وَٱلَّذِينَ هُمۡ عَنِ ٱللَّغۡوِ مُعۡرِضُونَ ٣

4. ಝಕಾತ್ ನೀಡುವವರು.

وَٱلَّذِينَ هُمۡ لِلزَّكَوٰةِ فَٰعِلُونَ ٤

5. ತಮ್ಮ ಗುಹ್ಯಭಾಗಗಳನ್ನು (ಅನೈತಿಕ ಸಂಗದಿಂದ) ಕಾಪಾಡುವವರು.

وَٱلَّذِينَ هُمۡ لِفُرُوجِهِمۡ حَٰفِظُونَ ٥

6. ತಮ್ಮ ಮಡದಿಯರು ಅಥವಾ ತಮ್ಮ ಅಧೀನದಲ್ಲಿರುವ ಗುಲಾಮಸ್ತ್ರೀಯರ ಜೊತೆಗೆ ಹೊರತು. ಇವರು ಆಕ್ಷೇಪಾರ್ಹರಲ್ಲ.

إِلَّا عَلَىٰٓ أَزۡوَٰجِهِمۡ أَوۡ مَا مَلَكَتۡ أَيۡمَٰنُهُمۡ فَإِنَّهُمۡ غَيۡرُ مَلُومِينَ ٦

7. ಆದರೆ ಯಾರು ಇವರ ಹೊರತಾದವರನ್ನು ಹುಡುಕುತ್ತಾರೋ ಅವರೇ ಅತಿರೇಕಿಗಳು.

فَمَنِ ٱبۡتَغَىٰ وَرَآءَ ذَٰلِكَ فَأُوْلَٰٓئِكَ هُمُ ٱلۡعَادُونَ ٧

8. ಅವರು ಯಾರೆಂದರೆ, ತಮ್ಮ ವಿಶ್ವಸ್ಥತೆಯನ್ನು ಮತ್ತು ಕರಾರುಗಳನ್ನು ಕಾಪಾಡುವವರು.

وَٱلَّذِينَ هُمۡ لِأَمَٰنَٰتِهِمۡ وَعَهۡدِهِمۡ رَٰعُونَ ٨

9. ತಮ್ಮ ನಮಾಝ್‌ಗಳನ್ನು ಸರಿಯಾದ ರೀತಿಯಲ್ಲಿ ನಿರ್ವಹಿಸುವವರು.

وَٱلَّذِينَ هُمۡ عَلَىٰ صَلَوَٰتِهِمۡ يُحَافِظُونَ ٩

10. ಅವರೇ ವಾರಸುದಾರರು.

أُوْلَٰٓئِكَ هُمُ ٱلۡوَٰرِثُونَ ١٠

11. ಅಂದರೆ, ಅತ್ಯುನ್ನತ ಸ್ವರ್ಗವನ್ನು (ಫಿರ್ದೌಸ್) ವಾರೀಸಾಗಿ ಪಡೆಯುವವರು. ಅವರು ಅಲ್ಲಿ ಶಾಶ್ವತವಾಗಿ ವಾಸಿಸುವರು.

ٱلَّذِينَ يَرِثُونَ ٱلۡفِرۡدَوۡسَ هُمۡ فِيهَا خَٰلِدُونَ ١١

12. ನಿಶ್ಚಯವಾಗಿಯೂ ನಾವು ಮನುಷ್ಯನನ್ನು ಜೇಡಿಮಣ್ಣಿನ ಸತ್ವದಿಂದ ಸೃಷ್ಟಿಸಿದೆವು.

وَلَقَدۡ خَلَقۡنَا ٱلۡإِنسَٰنَ مِن سُلَٰلَةٖ مِّن طِينٖ ١٢

13. ನಂತರ ಅವನನ್ನು ವೀರ್ಯವಾಗಿ ಮಾಡಿ ಒಂದು ಭದ್ರ ಸ್ಥಳದಲ್ಲಿಟ್ಟೆವು.

ثُمَّ جَعَلۡنَٰهُ نُطۡفَةٗ فِي قَرَارٖ مَّكِينٖ ١٣

14. ನಂತರ ಆ ವೀರ್ಯವನ್ನು ಹೆಪ್ಪುಗಟ್ಟಿದ ರಕ್ತಪಿಂಡವಾಗಿ ಮಾಡಿದೆವು. ನಂತರ ಆ ರಕ್ತಪಿಂಡವನ್ನು ಮಾಂಸದ ಮುದ್ದೆಯಾಗಿ ಮಾಡಿದೆವು. ನಂತರ ಆ ಮಾಂಸದ ಮುದ್ದೆಯನ್ನು

ثُمَّ خَلَقۡنَا ٱلنُّطۡفَةَ عَلَقَةٗ فَخَلَقۡنَا ٱلۡعَلَقَةَ مُضۡغَةٗ فَخَلَقۡنَا ٱلۡمُضۡغَةَ عِظَٰمٗا فَكَسَوۡنَا

ٱلْعِظَٰمَ لَحْمًا ثُمَّ أَنشَأْنَٰهُ خَلْقًا ءَاخَرَ ۚ فَتَبَارَكَ ٱللَّهُ أَحْسَنُ ٱلْخَٰلِقِينَ ﴿١٤﴾

ಮೂಳೆಗಳಾಗಿ ಮಾಡಿದೆವು. ನಂತರ ಆ ಮೂಳೆಗಳನ್ನು ಮಾಂಸದಿಂದ ಹೊದಿಸಿದೆವು. ನಂತರ ಅದನ್ನು ಇನ್ನೊಂದು ಸೃಷ್ಟಿಯಾಗಿ ಬೆಳೆಸಿದೆವು. ಆದ್ದರಿಂದ ಅತ್ಯುತ್ತಮ ಸೃಷ್ಟಿಕರ್ತನಾದ ಅಲ್ಲಾಹು ಸಮೃದ್ಧಪೂರ್ಣನಾಗಿದ್ದಾನೆ.

---

15. ನಂತರ ಅದರ ಬಳಿಕ ನೀವು ಖಂಡಿತ ಸಾಯುವಿರಿ.

ثُمَّ إِنَّكُم بَعْدَ ذَٰلِكَ لَمَيِّتُونَ ﴿١٥﴾

---

16. ನಂತರ ಪುನರುತ್ಥಾನ ದಿನದಂದು ನಿಮ್ಮನ್ನು ಖಂಡಿತ ಜೀವ ನೀಡಿ ಎಬ್ಬಿಸಲಾಗುವುದು.

ثُمَّ إِنَّكُمْ يَوْمَ ٱلْقِيَٰمَةِ تُبْعَثُونَ ﴿١٦﴾

---

17. ನಾವು ನಿಮ್ಮ ಮೇಲ್ಭಾಗದಲ್ಲಿ ಏಳು ಆಕಾಶಗಳನ್ನು ಸೃಷ್ಟಿಸಿದ್ದೇವೆ. ನಾವು ಸೃಷ್ಟಿಯ ಬಗ್ಗೆ ಯಾವತ್ತೂ ನಿರ್ಲಕ್ಷ್ಯರಾಗಿರಲಿಲ್ಲ.

وَلَقَدْ خَلَقْنَا فَوْقَكُمْ سَبْعَ طَرَآئِقَ وَمَا كُنَّا عَنِ ٱلْخَلْقِ غَٰفِلِينَ ﴿١٧﴾

---

18. ನಾವು ಆಕಾಶದಿಂದ ಒಂದು ನಿರ್ದಿಷ್ಟ ಪ್ರಮಾಣದಲ್ಲಿ ಮಳೆಯನ್ನು ಸುರಿಸಿ, ಅದನ್ನು ಭೂಮಿಯಲ್ಲಿ ತಂಗುವಂತೆ ಮಾಡಿದೆವು. ಅದನ್ನು ಇಂಗಿ ಹೋಗುವಂತೆ ಮಾಡಲು ನಮಗೆ ಖಂಡಿತ ಸಾಮರ್ಥ್ಯವಿದೆ.

وَأَنزَلْنَا مِنَ ٱلسَّمَآءِ مَآءًۢ بِقَدَرٍ فَأَسْكَنَّٰهُ فِى ٱلْأَرْضِ ۖ وَإِنَّا عَلَىٰ ذَهَابٍۭ بِهِۦ لَقَٰدِرُونَ ﴿١٨﴾

---

19. ನಂತರ ಅದರಿಂದ ನಾವು ನಿಮಗೆ ಖರ್ಜೂರ ಮತ್ತು ದ್ರಾಕ್ಷಿ ತೋಟಗಳನ್ನು ನಿರ್ಮಿಸಿಕೊಟ್ಟೆವು. ಅವುಗಳಲ್ಲಿ ನಿಮಗೆ ಹೇರಳ ಹಣ್ಣು-ಹಂಪಲುಗಳಿವೆ. ಅದರಿಂದಲೇ ನೀವು ತಿನ್ನುತ್ತೀರಿ.

فَأَنشَأْنَا لَكُم بِهِۦ جَنَّٰتٍ مِّن نَّخِيلٍ وَأَعْنَٰبٍ لَّكُمْ فِيهَا فَوَٰكِهُ كَثِيرَةٌ وَمِنْهَا تَأْكُلُونَ ﴿١٩﴾

---

20. ಸೀನಾ ಪರ್ವತದಲ್ಲಿ ಬೆಳೆಯುವ ಒಂದು ಮರವನ್ನು ನಾವು ಸೃಷ್ಟಿಸಿದ್ದೇವೆ. ಅದು ಎಣ್ಣೆಯನ್ನು ಉತ್ಪಾದಿಸುತ್ತದೆ ಮತ್ತು ಆಹಾರ ಸೇವಿಸುವವರಿಗೆ ಪಲ್ಯವಾಗಿದೆ.

وَشَجَرَةً تَخْرُجُ مِن طُورِ سَيْنَآءَ تَنۢبُتُ بِٱلدُّهْنِ وَصِبْغٍ لِّلْءَاكِلِينَ ﴿٢٠﴾

---

21. ನಿಶ್ಚಯವಾಗಿಯೂ ನಿಮಗೆ ಜಾನುವಾರುಗಳಲ್ಲಿ ನೀತಿಪಾಠವಿದೆ. ಅವುಗಳ ಹೊಟ್ಟೆಗಳಲ್ಲಿ ಏನಿದೆಯೋ ಅದರಿಂದ ನಾವು ನಿಮಗೆ ಕುಡಿಯಲು (ಹಾಲು) ನೀಡುತ್ತೇವೆ. ಅವುಗಳಿಂದ ನಿಮಗೆ ಹಲವಾರು ಉಪಕಾರಗಳಿವೆ. ಅವುಗಳ ಮಾಂಸವನ್ನೂ ನೀವು ತಿನ್ನುತ್ತೀರಿ.

وَإِنَّ لَكُمْ فِى ٱلْأَنْعَٰمِ لَعِبْرَةً ۖ نُّسْقِيكُم مِّمَّا فِى بُطُونِهَا وَلَكُمْ فِيهَا مَنَٰفِعُ كَثِيرَةٌ وَمِنْهَا تَأْكُلُونَ ﴿٢١﴾

---

22. ಅವುಗಳ ಬೆನ್ನುಗಳಲ್ಲಿ ಮತ್ತು ನಾವೆಗಳಲ್ಲಿ ನೀವು ಸವಾರಿ ಮಾಡುತ್ತೀರಿ.

وَعَلَيْهَا وَعَلَى ٱلْفُلْكِ تُحْمَلُونَ ﴿٢٢﴾

---

23. ನಾವು ನೂಹರನ್ನು ಅವರ ಜನರ ಬಳಿಗೆ ಸಂದೇಶವಾಹಕರಾಗಿ ಕಳುಹಿಸಿದೆವು. ಅವರು ಹೇಳಿದರು: "ಓ ನನ್ನ ಜನರೇ! ನೀವು ಅಲ್ಲಾಹನನ್ನು ಆರಾಧಿಸಿರಿ. ಅವನ ಹೊರತು ಆರಾಧನೆಗೆ ಅರ್ಹರಾದ ಬೇರೆ ದೇವರು ನಿಮಗಿಲ್ಲ. ನೀವು ಅವನನ್ನು ಭಯಪಡುವುದಿಲ್ಲವೇ?"

وَلَقَدْ أَرْسَلْنَا نُوحًا إِلَىٰ قَوْمِهِۦ فَقَالَ يَٰقَوْمِ ٱعْبُدُوا۟ ٱللَّهَ مَا لَكُم مِّنْ إِلَٰهٍ غَيْرُهُۥٓ ۖ أَفَلَا تَتَّقُونَ ﴿٢٣﴾

24. ಆಗ ಅವರ ಜನರಲ್ಲಿದ್ದ ಸತ್ಯನಿಷೇಧಿ ಮುಖಂಡರು ಹೇಳಿದರು: "ಇವನು ನಿಮ್ಮಂತಿರುವ ಒಬ್ಬ ಮನುಷ್ಯ ಮಾತ್ರ. ಇವನು ನಿಮಗಿಂತಲೂ ಹೆಚ್ಚು ಶ್ರೇಷ್ಠನಾಗಲು ಬಯಸುತ್ತಿದ್ದಾನೆ. ಅಲ್ಲಾಹು ಇಚ್ಛಿಸಿದ್ದರೆ ದೇವದೂತರನ್ನು ಕಳುಹಿಸುತ್ತಿದ್ದನು. ನಾವು ನಮ್ಮ ಪೂರ್ವಜರ ಕಾಲದಿಂದ ಇಂತಹ ಒಂದು ಸುದ್ದಿಯನ್ನು ಕೇಳಿಯೇ ಇಲ್ಲ.

فَقَالَ ٱلْمَلَؤُا۟ ٱلَّذِينَ كَفَرُوا۟ مِن قَوْمِهِۦ مَا هَٰذَآ إِلَّا بَشَرٌ مِّثْلُكُمْ يُرِيدُ أَن يَتَفَضَّلَ عَلَيْكُمْ وَلَوْ شَآءَ ٱللَّهُ لَأَنزَلَ مَلَٰٓئِكَةً مَّا سَمِعْنَا بِهَٰذَا فِىٓ ءَابَآئِنَا ٱلْأَوَّلِينَ ٢٤

25. ಈತ ಬುದ್ಧಿಸ್ತಿಮಿತ ಕಳಕೊಂಡ ವ್ಯಕ್ತಿಯಾಗಿದ್ದಾನೆ. ಆದ್ದರಿಂದ ಇವನ ವಿಷಯದಲ್ಲಿ ಸ್ವಲ್ಪ ಸಮಯ ಕಾಯಿರಿ."

إِنْ هُوَ إِلَّا رَجُلٌۢ بِهِۦ جِنَّةٌ فَتَرَبَّصُوا۟ بِهِۦ حَتَّىٰ حِينٍ ٢٥

26. ನೂಹ್ ಪ್ರಾರ್ಥಿಸಿದರು: "ಓ ನನ್ನ ಪರಿಪಾಲಕನೇ! ನನಗೆ ಸಹಾಯ ಮಾಡು. ಏಕೆಂದರೆ ಇವರು ನನ್ನನ್ನು ನಿಷೇಧಿಸಿದ್ದಾರೆ."

قَالَ رَبِّ ٱنصُرْنِى بِمَا كَذَّبُونِ ٢٦

27. ಆಗ ನಾವು ಅವರಿಗೆ ದೇವವಾಣಿಯನ್ನು ನೀಡಿದೆವು: ನಮ್ಮ ಕಣ್ಣುಗಳ ಮುಂಭಾಗದಲ್ಲಿ ನಮ್ಮ ದೇವವಾಣಿಯ ನಿರ್ದೇಶನದಂತೆ ನೀವು ಒಂದು ನಾವೆಯನ್ನು ನಿರ್ಮಿಸಿರಿ. ನಂತರ ನಮ್ಮ ಆಜ್ಞೆಯು ಬಂದು ಒಲೆ ಉಕ್ಕಿ ಹರಿದಾಗ, ಎಲ್ಲಾ ಜೀವಿಗಳ ಒಂದೊಂದು ಜೋಡಿಯನ್ನು (ಗಂಡು ಮತ್ತು ಹೆಣ್ಣು) ಅದರಲ್ಲಿ ಹತ್ತಿಸಿರಿ. ತಮ್ಮ ಕುಟುಂಬದವರಲ್ಲಿ ಯಾರ ಮೇಲೆ ಅಲ್ಲಾಹನ ಮಾತು ಖಾತ್ರಿಯಾಗಿದೆಯೋ ಅವರನ್ನು ಬಿಟ್ಟು ಉಳಿದವರನ್ನು ಹತ್ತಿಸಿರಿ. ಅಕ್ರಮಿಗಳ ವಿಷಯದಲ್ಲಿ ನನ್ನೊಂದಿಗೆ ಮಾತನಾಡಬೇಡಿ. ನಿಶ್ಚಯವಾಗಿಯೂ ಅವರು ಮುಳುಗಿ ಸಾಯುವರು.

فَأَوْحَيْنَآ إِلَيْهِ أَنِ ٱصْنَعِ ٱلْفُلْكَ بِأَعْيُنِنَا وَوَحْيِنَا فَإِذَا جَآءَ أَمْرُنَا وَفَارَ ٱلتَّنُّورُ فَٱسْلُكْ فِيهَا مِن كُلٍّ زَوْجَيْنِ ٱثْنَيْنِ وَأَهْلَكَ إِلَّا مَن سَبَقَ عَلَيْهِ ٱلْقَوْلُ مِنْهُمْ ۖ وَلَا تُخَٰطِبْنِى فِى ٱلَّذِينَ ظَلَمُوٓا۟ ۖ إِنَّهُم مُّغْرَقُونَ ٢٧

28. ನಂತರ ನೀವು ಮತ್ತು ನಿಮ್ಮ ಜೊತೆಯಲ್ಲಿರುವವರು ನಾವೆಯಲ್ಲಿ ಆರೂಢರಾದಾಗ, "ಅಕ್ರಮಿಗಳಾದ ಜನರಿಂದ ನಮ್ಮನ್ನು ಪಾರುಮಾಡಿದ ಅಲ್ಲಾಹನಿಗೆ ಸರ್ವಸ್ತುತಿ" ಎಂದು ಹೇಳಿರಿ.

فَإِذَا ٱسْتَوَيْتَ أَنتَ وَمَن مَّعَكَ عَلَى ٱلْفُلْكِ فَقُلِ ٱلْحَمْدُ لِلَّهِ ٱلَّذِى نَجَّىٰنَا مِنَ ٱلْقَوْمِ ٱلظَّٰلِمِينَ ٢٨

29. ಹೇಳಿರಿ: "ಓ ನನ್ನ ಪರಿಪಾಲಕನೇ! ನನ್ನನ್ನು ಸಮೃದ್ಧವಾದ ಸ್ಥಳದಲ್ಲಿ ಇಳಿಸು. ಇಳಿಸುವವರಲ್ಲಿ ನೀನು ಅತಿಶ್ರೇಷ್ಠನಾಗಿರುವೆ."

وَقُل رَّبِّ أَنزِلْنِى مُنزَلًا مُّبَارَكًا وَأَنتَ خَيْرُ ٱلْمُنزِلِينَ ٢٩

30. ನಿಶ್ಚಯವಾಗಿಯೂ ಅದರಲ್ಲಿ (ಜಲಪ್ರಳಯದಲ್ಲಿ) ಅನೇಕ ದೃಷ್ಟಾಂತಗಳಿವೆ. ನಿಜಕ್ಕೂ ನಾವು ಪರೀಕ್ಷಿಸುವವರೇ ಆಗಿದ್ದೇವೆ.

إِنَّ فِى ذَٰلِكَ لَءَايَٰتٍ وَإِن كُنَّا لَمُبْتَلِينَ ٣٠

31. ನಂತರ, ಅವರ ಬಳಿಕ ನಾವು ಇನ್ನೊಂದು ತಲೆಮಾರನ್ನು ಸೃಷ್ಟಿಸಿದೆವು.

ثُمَّ أَنشَأْنَا مِنۢ بَعْدِهِمْ قَرْنًا ءَاخَرِينَ ٣١

32. ಅವರ ಬಳಿಗೆ ಅವರಿಂದಲೇ ಒಬ್ಬ ಸಂದೇಶವಾಹಕ-ರನ್ನು ಕಳುಹಿಸಿದೆವು. (ಅವರು ಹೇಳಿದರು): "ಅಲ್ಲಾಹನನ್ನು

فَأَرْسَلْنَا فِيهِمْ رَسُولًا مِّنْهُمْ أَنِ ٱعْبُدُوا۟ ٱللَّهَ مَا

| | | |
|---|---|---|
| | ಆರಾಧಿಸಿರಿ. ನಿಮಗೆ ಅವನ ಹೊರತು ಆರಾಧನೆಗೆ ಅರ್ಹರಾದ ಬೇರೆ ದೇವರಿಲ್ಲ. ನೀವು ಅವನನ್ನು ಭಯಪಡುವುದಿಲ್ಲವೇ?" | لَكُم مِّنْ إِلَٰهٍ غَيْرُهُۥٓ ۚ أَفَلَا تَتَّقُونَ ﴿٣٢﴾ |
| 33. | ಅವರ ಜನರಲ್ಲಿದ್ದ, ಸತ್ಯನಿಷೇಧಿಗಳಾದ ಮತ್ತು ಪರಲೋಕದ ಭೇಟಿಯನ್ನು ನಿಷೇಧಿಸಿದ ಮುಖಂಡರು—ನಾವು ಅವರಿಗೆ ಐಹಿಕ ಸುಖಭೋಗಗಳನ್ನು ನೀಡಿದ್ದೆವು—ಹೇಳಿದರು: "ಇವನು ನಿಮ್ಮಂತಿರುವ ಒಬ್ಬ ಮನುಷ್ಯ ಮಾತ್ರ. ನೀವು ತಿನ್ನುವುದನ್ನೇ ಇವನೂ ತಿನ್ನುತ್ತಾನೆ ಮತ್ತು ನೀವು ಕುಡಿಯುವುದನ್ನೇ ಇವನೂ ಕುಡಿಯುತ್ತಾನೆ. | وَقَالَ ٱلْمَلَأُ مِن قَوْمِهِ ٱلَّذِينَ كَفَرُوا۟ وَكَذَّبُوا۟ بِلِقَآءِ ٱلْـَٔاخِرَةِ وَأَتْرَفْنَٰهُمْ فِى ٱلْحَيَوٰةِ ٱلدُّنْيَا مَا هَٰذَآ إِلَّا بَشَرٌ مِّثْلُكُمْ يَأْكُلُ مِمَّا تَأْكُلُونَ مِنْهُ وَيَشْرَبُ مِمَّا تَشْرَبُونَ ﴿٣٣﴾ |
| 34. | ನೀವು ನಿಮ್ಮಂತಿರುವ ಒಬ್ಬ ಮನುಷ್ಯನನ್ನು ಅನುಸರಿಸಿದರೆ, ನೀವು ಖಂಡಿತ ನಷ್ಟ ಹೊಂದುವಿರಿ. | وَلَئِنْ أَطَعْتُم بَشَرًا مِّثْلَكُمْ إِنَّكُمْ إِذًا لَّخَٰسِرُونَ ﴿٣٤﴾ |
| 35. | ನೀವು ಸತ್ತು, ಮಣ್ಣು ಮತ್ತು ಮೂಳೆಗಳಾಗಿ ಬಿಟ್ಟ ಬಳಿಕವೂ ನಿಮಗೆ ಪುನಃ ಜೀವ ನೀಡಿ ಹೊರತೆಗೆಯಲಾಗುವುದೆಂದು ಇವನು ನಿಮಗೆ ವಾಗ್ದಾನ ಮಾಡುತ್ತಿದ್ದಾನೆಯೇ? | أَيَعِدُكُمْ أَنَّكُمْ إِذَا مِتُّمْ وَكُنتُمْ تُرَابًا وَعِظَٰمًا أَنَّكُم مُّخْرَجُونَ ﴿٣٥﴾ |
| 36. | ನಿಮಗೆ ವಾಗ್ದಾನ ಮಾಡಲಾಗುತ್ತಿರುವ ಈ ವಿಷಯವು ಬಹಳ ದೂರದಲ್ಲಿದೆ! ಬಹಳ ದೂರದಲ್ಲಿದೆ! | ۞ هَيْهَاتَ هَيْهَاتَ لِمَا تُوعَدُونَ ﴿٣٦﴾ |
| 37. | ಜೀವನವೆಂದರೆ ನಮ್ಮ ಈ ಇಹಲೋಕದ ಜೀವನದ ಮಾತ್ರ. ಇಲ್ಲಿ ನಾವು ಹುಟ್ಟುತ್ತಲೂ ಸಾಯುತ್ತಲೂ ಇರುತ್ತೇವೆ. ನಮಗೆ ಜೀವ ನೀಡಿ ಎಬ್ಬಿಸಲಾಗುವ ಸಂಗತಿಯೇ ಇಲ್ಲ. | إِنْ هِىَ إِلَّا حَيَاتُنَا ٱلدُّنْيَا نَمُوتُ وَنَحْيَا وَمَا نَحْنُ بِمَبْعُوثِينَ ﴿٣٧﴾ |
| 38. | ಇವನು ಅಲ್ಲಾಹನ ಮೇಲೆ ಸುಳ್ಳನ್ನು ಆರೋಪಿಸುವ ವ್ಯಕ್ತಿ. ನಾವು ಇವನಲ್ಲಿ ವಿಶ್ವಾಸವಿಡುವುದೇ ಇಲ್ಲ." | إِنْ هُوَ إِلَّا رَجُلٌ ٱفْتَرَىٰ عَلَى ٱللَّهِ كَذِبًا وَمَا نَحْنُ لَهُۥ بِمُؤْمِنِينَ ﴿٣٨﴾ |
| 39. | ಅವರು (ಸಂದೇಶವಾಹಕರು) ಹೇಳಿದರು: "ಓ ನನ್ನ ಪರಿಪಾಲಕನೇ! ನನಗೆ ಸಹಾಯ ಮಾಡು. ಏಕೆಂದರೆ ಇವರು ನನ್ನನ್ನು ನಿಷೇಧಿಸಿದ್ದಾರೆ." | قَالَ رَبِّ ٱنصُرْنِى بِمَا كَذَّبُونِ ﴿٣٩﴾ |
| 40. | ಅಲ್ಲಾಹು ಹೇಳಿದನು: "ಅವರು ಶೀಘ್ರದಲ್ಲೇ ಖಂಡಿತ ಮರುಗುವ ಸ್ಥಿತಿಯಲ್ಲಾಗುವರು." | قَالَ عَمَّا قَلِيلٍ لَّيُصْبِحُنَّ نَٰدِمِينَ ﴿٤٠﴾ |
| 41. | ನಂತರ ಒಂದು ಭಯಾನಕ ಚೀತ್ಕಾರವು ನ್ಯಾಯಯುತವಾಗಿ ಅವರನ್ನು ಹಿಡಿದುಕೊಂಡಿತು. ನಾವು ಅವರನ್ನು ಕಸಕಡ್ಡಿಗಳಂತೆ ಮಾಡಿದೆವು. ಅಕ್ರಮವೆಸಗಿದ ಜನರು ಅಲ್ಲಾಹನ ದಯೆಯಿಂದ ದೂರವಾಗಲಿ! | فَأَخَذَتْهُمُ ٱلصَّيْحَةُ بِٱلْحَقِّ فَجَعَلْنَٰهُمْ غُثَآءً ۚ فَبُعْدًا لِّلْقَوْمِ ٱلظَّٰلِمِينَ ﴿٤١﴾ |
| 42. | ನಂತರ, ಅವರ ಬಳಿಕ ನಾವು ಬೇರೆ ತಲೆಮಾರುಗಳನ್ನು | ثُمَّ أَنشَأْنَا مِنۢ بَعْدِهِمْ قُرُونًا ءَاخَرِينَ ﴿٤٢﴾ |

ಸೃಷ್ಟಿಸಿದೆವು.

مَا تَسۡبِقُ مِنۡ أُمَّةٍ أَجَلَهَا وَمَا يَسۡتَـٔۡخِرُونَ ﴿٤٣﴾

43. ಯಾವುದೇ ಸಮುದಾಯವು ಅದಕ್ಕೆ ನಿಶ್ಚಯಿಸಲಾದ ಅವಧಿಯನ್ನು ದಾಟಿ ಹೋಗುವುದಿಲ್ಲ. ಅವರು ಹಿಂದೆ ಉಳಿಯುವುದೂ ಇಲ್ಲ.

ثُمَّ أَرۡسَلۡنَا رُسُلَنَا تَتۡرَاۖ كُلَّ مَا جَآءَ أُمَّةً رَّسُولُهَا كَذَّبُوهُۖ فَأَتۡبَعۡنَا بَعۡضَهُم بَعۡضٗا وَجَعَلۡنَٰهُمۡ أَحَادِيثَۚ فَبُعۡدٗا لِّقَوۡمٖ لَّا يُؤۡمِنُونَ ﴿٤٤﴾

44. ನಂತರ ನಾವು ಸತತವಾಗಿ ನಮ್ಮ ಸಂದೇಶವಾಹಕ-ರನ್ನು ಕಳುಹಿಸಿದೆವು. ಯಾವುದೇ ಸಮುದಾಯಕ್ಕೆ ಅವರ ಸಂದೇಶವಾಹಕರು ಬಂದಾಗಲೆಲ್ಲ ಅವರು ಆ ಸಂದೇಶ-ವಾಹಕರನ್ನು ನಿಷೇಧಿಸಿದರು. ಆಗ ನಾವು ಅವರಲ್ಲಿ ಒಬ್ಬರು ಇನ್ನೊಬ್ಬರನ್ನು ಹಿಂಬಾಲಿಸುವಂತೆ ಮಾಡಿ, ಅವರನ್ನು ದಂತಕ-ಥೆಗಳನ್ನಾಗಿ ಮಾಡಿದೆವು. ವಿಶ್ವಾಸವಿಡದ ಜನರು ಅಲ್ಲಾಹನ ದಯೆಯಿಂದ ದೂರವಾಗಲಿ!

ثُمَّ أَرۡسَلۡنَا مُوسَىٰ وَأَخَاهُ هَٰرُونَ بِـَٔايَٰتِنَا وَسُلۡطَٰنٖ مُّبِينٍ ﴿٤٥﴾

45. ನಂತರ ನಾವು ಮೂಸಾ ಮತ್ತು ಅವರ ಸಹೋದರ ಹಾರೂನರನ್ನು ನಮ್ಮ ದೃಷ್ಟಾಂತಗಳೊಂದಿಗೆ ಮತ್ತು ಸ್ಪಷ್ಟ ಸಾಕ್ಷ್ಯಾ-ಧಾರಗಳೊಂದಿಗೆ ಕಳುಹಿಸಿದೆವು.

إِلَىٰ فِرۡعَوۡنَ وَمَلَإِيْهِۦ فَٱسۡتَكۡبَرُواْ وَكَانُواْ قَوۡمًا عَالِينَ ﴿٤٦﴾

46. ಫರೋಹ ಮತ್ತು ಅವನ ಜನರ ಮುಖಂಡರ ಬಳಿಗೆ. ಆದರೆ ಅವರು ಅಹಂಕಾರದಿಂದ ವರ್ತಿಸಿದರು. ಅವರು ಮಹಾ ದರ್ಪದ ಜನರಾಗಿದ್ದರು.

فَقَالُوٓاْ أَنُؤۡمِنُ لِبَشَرَيۡنِ مِثۡلِنَا وَقَوۡمُهُمَا لَنَا عَٰبِدُونَ ﴿٤٧﴾

47. ಅವರು ಹೇಳಿದರು: "ಏನು? ನಾವು ನಮ್ಮಂತಿರುವ ಇಬ್ಬರು ವ್ಯಕ್ತಿಗಳಲ್ಲಿ ವಿಶ್ವಾಸವಿಡಬೇಕೇ? ಅದೂ ಅವರ ಜನರು ನಮ್ಮ ಗುಲಾಮರಾಗಿರುವಾಗ!"

فَكَذَّبُوهُمَا فَكَانُواْ مِنَ ٱلۡمُهۡلَكِينَ ﴿٤٨﴾

48. ಅವರು ಅವರಿಬ್ಬರನ್ನೂ ನಿಷೇಧಿಸಿದರು. ಆದ್ದರಿಂದ ಅವರು ವಿನಾಶ ಹೊಂದಿದವರಲ್ಲಿ ಸೇರಿದರು.

وَلَقَدۡ ءَاتَيۡنَا مُوسَى ٱلۡكِتَٰبَ لَعَلَّهُمۡ يَهۡتَدُونَ ﴿٤٩﴾

49. ನಾವು ಮೂಸಾರಿಗೆ ಗ್ರಂಥವನ್ನು ನೀಡಿದೆವು. ಅವರು (ಇಸ್ರಾಯೇಲ್ ಮಕ್ಕಳು) ಸನ್ಮಾರ್ಗ ಪಡೆಯಲೆಂದು.

وَجَعَلۡنَا ٱبۡنَ مَرۡيَمَ وَأُمَّهُۥٓ ءَايَةٗ وَءَاوَيۡنَٰهُمَآ إِلَىٰ رَبۡوَةٖ ذَاتِ قَرَارٖ وَمَعِينٖ ﴿٥٠﴾

50. ನಾವು ಮರ್ಯಮರ ಪುತ್ರ ಈಸಾರನ್ನು ಮತ್ತು ಅವರ ತಾಯಿಯನ್ನು ಒಂದು ದೃಷ್ಟಾಂತವಾಗಿ ಮಾಡಿದೆವು. ವಾಸಯೋಗ್ಯವಾದ ಮತ್ತು ನೀರಿನ ಚಿಲುಮೆಯಿರುವ ಒಂದು ಎತ್ತರದ ಸ್ಥಳದಲ್ಲಿ ನಾವು ಅವರಿಬ್ಬರಿಗೆ ಆಶ್ರಯ ನೀಡಿದೆವು.

يَٰٓأَيُّهَا ٱلرُّسُلُ كُلُواْ مِنَ ٱلطَّيِّبَٰتِ وَٱعۡمَلُواْ صَٰلِحًاۖ إِنِّي بِمَا تَعۡمَلُونَ عَلِيمٞ ﴿٥١﴾

51. ಸಂದೇಶವಾಹಕರುಗಳೇ! ಶುದ್ಧ ವಸ್ತುಗಳನ್ನು ತಿನ್ನಿರಿ ಮತ್ತು ಸತ್ಕರ್ಮ ಮಾಡಿರಿ. ನಿಶ್ಚಯವಾಗಿಯೂ ನೀವು ಮಾಡುವ

ಕರ್ಮಗಳನ್ನು ನಾನು ತಿಳಿಯುತ್ತಿದ್ದೇನೆ.

52. ನಿಶ್ಚಯವಾಗಿಯೂ ಇದು ನಿಮ್ಮ ಧರ್ಮವು ಏಕೈಕ ಧರ್ಮವಾಗಿದೆ ಮತ್ತು ನಾನು ನಿಮ್ಮ ಪರಿಪಾಲಕನಾಗಿದ್ದೇನೆ. ಆದ್ದರಿಂದ ನೀವು ನನ್ನನ್ನು ಭಯಪಡಿರಿ.

وَإِنَّ هَٰذِهِۦٓ أُمَّتُكُمۡ أُمَّةٗ وَٰحِدَةٗ وَأَنَا۠ رَبُّكُمۡ فَٱتَّقُونِ ﴿٥٢﴾

53. ನಂತರ ಅವರು ತಮ್ಮ ವಿಷಯದಲ್ಲಿ (ಧರ್ಮದಲ್ಲಿ) ಭಿನ್ನಮತ ತಳೆದು ಹಲವು ಗುಂಪುಗಳಾಗಿ ವಿಭಜನೆಯಾದರು. ಎಲ್ಲಾ ಗುಂಪುಗಳೂ ಅವರ ಬಳಿ ಏನಿದೆಯೋ ಅದರಲ್ಲೇ ಖುಷಿಪಡುತ್ತಿದ್ದಾರೆ.

فَتَقَطَّعُوٓاْ أَمۡرَهُم بَيۡنَهُمۡ زُبُرٗاۖ كُلُّ حِزۡبِۭ بِمَا لَدَيۡهِمۡ فَرِحُونَ ﴿٥٣﴾

54. ಆದ್ದರಿಂದ (ಪ್ರವಾದಿಯವರೇ) ನೀವು ಅವರನ್ನು ಒಂದು ಅವಧಿಯವರೆಗೆ ಅವರ ಗೊಂದಲದಲ್ಲೇ ಇರಲು ಬಿಟ್ಟುಬಿಡಿ.

فَذَرۡهُمۡ فِي غَمۡرَتِهِمۡ حَتَّىٰ حِينٍ ﴿٥٤﴾

55. ಅವರೇನು ಭಾವಿಸುತ್ತಿದ್ದಾರೆ? ನಾವು ಅವರಿಗೆ ಆಸ್ತಿ ಮತ್ತು ಮಕ್ಕಳನ್ನು ಹೆಚ್ಚಿಸುತ್ತಿರುವುದು,

أَيَحۡسَبُونَ أَنَّمَا نُمِدُّهُم بِهِۦ مِن مَّالٖ وَبَنِينَ ﴿٥٥﴾

56. ಅವರಿಗೆ ಒಳಿತುಗಳನ್ನು ನೀಡಲು ನಾವು ತ್ವರೆ ಮಾಡುತ್ತಿದ್ದೇವೆ ಎಂದೇ? ಅಲ್ಲ, ಅವರು (ಸತ್ಯಸಂಗತಿಯನ್ನು) ತಿಳಿಯುವುದಿಲ್ಲ.[1]

نُسَارِعُ لَهُمۡ فِي ٱلۡخَيۡرَٰتِۚ بَل لَّا يَشۡعُرُونَ ﴿٥٦﴾

57. ನಿಶ್ಚಯವಾಗಿಯೂ ತಮ್ಮ ಪರಿಪಾಲಕನ (ಅಲ್ಲಾಹನ) ಭಯದಿಂದ ನಡುಗುವವರು,

إِنَّ ٱلَّذِينَ هُم مِّنۡ خَشۡيَةِ رَبِّهِم مُّشۡفِقُونَ ﴿٥٧﴾

58. ತಮ್ಮ ಪರಿಪಾಲಕನ (ಅಲ್ಲಾಹನ) ವಚನಗಳಲ್ಲಿ ವಿಶ್ವಾಸವಿಡುವವರು,

وَٱلَّذِينَ هُم بِـَٔايَٰتِ رَبِّهِمۡ يُؤۡمِنُونَ ﴿٥٨﴾

59. ತಮ್ಮ ಪರಿಪಾಲಕನೊಂದಿಗೆ (ಅಲ್ಲಾಹನೊಂದಿಗೆ) ಸಹಭಾಗಿತ್ವ (ಶಿರ್ಕ್) ಮಾಡದವರು,

وَٱلَّذِينَ هُم بِرَبِّهِمۡ لَا يُشۡرِكُونَ ﴿٥٩﴾

60. ಕೊಡುವುದೆಲ್ಲವನ್ನೂ ಕೊಡುವವರು ಮತ್ತು ನಮಗೆ ನಮ್ಮ ಪರಿಪಾಲಕನ (ಅಲ್ಲಾಹನ) ಬಳಿಗೆ ಮರಳಬೇಕಾಗಿದೆಯೆಂದು ಹೃದಯಗಳಲ್ಲಿ ಭಯವನ್ನು ಹೊಂದಿರುವವರು ಯಾರೋ,

وَٱلَّذِينَ يُؤۡتُونَ مَآ ءَاتَواْ وَّقُلُوبُهُمۡ وَجِلَةٌ أَنَّهُمۡ إِلَىٰ رَبِّهِمۡ رَٰجِعُونَ ﴿٦٠﴾

61. ಅವರೇ ಒಳಿತಿನ ವಿಷಯಗಳಲ್ಲಿ ತ್ವರೆ ಮಾಡುವವರು. ಅವರೇ ಅದರಲ್ಲಿ ಮುಂಚೂಣಿಯಲ್ಲಿರುವವರು.

أُوْلَٰٓئِكَ يُسَٰرِعُونَ فِي ٱلۡخَيۡرَٰتِ وَهُمۡ لَهَا سَٰبِقُونَ ﴿٦١﴾

62. ಯಾವುದೇ ಮನುಷ್ಯನ ಮೇಲೂ ಅವನ ಸಾಮರ್ಥ್ಯಕ್ಕಿಂತ ಹೆಚ್ಚಿನದ್ದನ್ನು ನಾವು ಹೊರಿಸುವುದಿಲ್ಲ. ಸತ್ಯ ಸಮೇತ ಮಾತನಾಡುವ ಒಂದು ಗ್ರಂಥವು ನಮ್ಮ ಬಳಿಯಿದೆ. ಅವರಿಗೆ

وَلَا نُكَلِّفُ نَفۡسًا إِلَّا وُسۡعَهَاۚ وَلَدَيۡنَا كِتَٰبٞ يَنطِقُ بِٱلۡحَقِّ وَهُمۡ لَا يُظۡلَمُونَ ﴿٦٢﴾

[1] ಅಲ್ಲಾಹು ಕಷ್ಟಗಳನ್ನು ನೀಡಿ ಪರೀಕ್ಷಿಸುವಂತೆಯೇ ಸುಖಗಳನ್ನು ನೀಡಿಯೂ ಪರೀಕ್ಷಿಸುತ್ತಾನೆ.

ಯಾವುದೇ ಅನ್ಯಾಯವಾಗುವುದಿಲ್ಲ.

| | | |
|---|---|---|
| 63. | ಆದರೆ, ಅವರ ಹೃದಯಗಳು ಈ ವಿಷಯದಲ್ಲಿ ನಿರ್ಲಕ್ಷ್ಯವಾಗಿವೆ. ಅವರಿಗೆ ಇದರ ಹೊರತಾಗಿರುವ ಬೇರೆ ದುಷ್ಕರ್ಮಗಳೂ ಇವೆ. ಅವರು ಅದನ್ನು ಮಾಡುತ್ತಿದ್ದಾರೆ. | بَلۡ قُلُوبُهُمۡ فِي غَمۡرَةٖ مِّنۡ هَٰذَا وَلَهُمۡ أَعۡمَٰلٞ مِّن دُونِ ذَٰلِكَ هُمۡ لَهَا عَٰمِلُونَ ٦٣ |
| 64. | ಎಲ್ಲಿಯವರೆಗೆಂದರೆ, ನಾವು ಅವರಲ್ಲಿನ ಸಂಪನ್ನರನ್ನು ಶಿಕ್ಷೆಯ ಮೂಲಕ ಹಿಡಿದುಕೊಂಡಾಗ ಅಗೋ! ಅವರು ಗೋಗರೆಯುತ್ತಿದ್ದಾರೆ. | حَتَّىٰٓ إِذَآ أَخَذۡنَا مُتۡرَفِيهِم بِٱلۡعَذَابِ إِذَا هُمۡ يَجۡـَٔرُونَ ٦٤ |
| 65. | ಇಂದು ನೀವು ಗೋಗರೆಯಬೇಕಾಗಿಲ್ಲ. ನಿಶ್ಚಯವಾಗಿಯೂ ನಿಮಗೆ ನಮ್ಮ ಕಡೆಯಿಂದ ಸಹಾಯವು ದೊರೆಯುವುದಿಲ್ಲ. | لَا تَجۡـَٔرُواْ ٱلۡيَوۡمَۖ إِنَّكُم مِّنَّا لَا تُنصَرُونَ ٦٥ |
| 66. | ನನ್ನ ವಚನಗಳನ್ನು ನಿಮಗೆ ಓದಿಕೊಡಲಾಗುತ್ತಿತ್ತು. ಆಗ ನೀವು ನಿಮ್ಮ ಹಿಮ್ಮಡಿಗಳಲ್ಲಿ ಹಿಂದಕ್ಕೆ ತಿರುಗಿ ನಡೆಯುತ್ತಿದ್ದಿರಿ. | قَدۡ كَانَتۡ ءَايَٰتِي تُتۡلَىٰ عَلَيۡكُمۡ فَكُنتُمۡ عَلَىٰٓ أَعۡقَٰبِكُمۡ تَنكِصُونَ ٦٦ |
| 67. | ಅಹಂಕಾರದಿಂದ ವರ್ತಿಸುತ್ತಾ (ನಡೆಯುತ್ತಿದ್ದಿರಿ). ಅದೊಂದು ರಾತ್ರಿ ಕಥೆಯೋ ಎಂಬಂತೆ ನೀವು ಅದರ (ಕುರ್‌ಆನ್‌ನ) ಬಗ್ಗೆ ಕೆಟ್ಟದಾಗಿ ಮಾತನಾಡುತ್ತಿದ್ದಿರಿ. | مُسۡتَكۡبِرِينَ بِهِۦ سَٰمِرٗا تَهۡجُرُونَ ٦٧ |
| 68. | ಅವರು ಈ ಮಾತಿನ (ಕುರ್‌ಆನಿನ) ಬಗ್ಗೆ ಆಳವಾಗಿ ಯೋಚಿಸುವುದಿಲ್ಲವೇ? ಅಥವಾ, ಅವರ ಪೂರ್ವಜರ ಬಳಿಗೆ ಬರದೇ ಇರುವಂತದ್ದು ಇವರ ಬಳಿಗೆ ಬಂದಿದೆಯೇ? | أَفَلَمۡ يَدَّبَّرُواْ ٱلۡقَوۡلَ أَمۡ جَآءَهُم مَّا لَمۡ يَأۡتِ ءَابَآءَهُمُ ٱلۡأَوَّلِينَ ٦٨ |
| 69. | ಅವರಿಗೆ ಅವರ ಸಂದೇಶವಾಹಕರ ಪರಿಚಯವಿಲ್ಲದಿರುವು-ದರಿಂದ ಅವರು ಅವರನ್ನು ನಿಷೇಧಿಸುತ್ತಿದ್ದಾರೆಯೇ? | أَمۡ لَمۡ يَعۡرِفُواْ رَسُولَهُمۡ فَهُمۡ لَهُۥ مُنكِرُونَ ٦٩ |
| 70. | ಅವರಿಗೆ (ಪ್ರವಾದಿಗೆ) ಬುದ್ಧಿಭ್ರಮಣೆಯಾಗಿದೆಯೆಂದು ಅವರು ಹೇಳುತ್ತಿದ್ದಾರೆಯೇ? ಅಲ್ಲ, ವಾಸ್ತವವಾಗಿ ಅವರು (ಪ್ರವಾದಿ) ಸತ್ಯದೊಂದಿಗೆ ಅವರ ಬಳಿಗೆ ಬಂದಿದ್ದಾರೆ. ಆದರೆ ಅವರಲ್ಲಿ ಹೆಚ್ಚಿನವರು ಸತ್ಯವನ್ನು ದ್ವೇಷಿಸುತ್ತಾರೆ. | أَمۡ يَقُولُونَ بِهِۦ جِنَّةُۢۚ بَلۡ جَآءَهُم بِٱلۡحَقِّ وَأَكۡثَرُهُمۡ لِلۡحَقِّ كَٰرِهُونَ ٧٠ |
| 71. | ಒಂದು ವೇಳೆ ಸತ್ಯವು ಅವರ ಸ್ವೇಚ್ಛೆಗಳನ್ನು ಹಿಂಬಾಲಿಸಿದ್ದರೆ ಭೂಮ್ಯಾಕಾಶಗಳು ಮತ್ತು ಅವುಗಳಲ್ಲಿರುವ ಎಲ್ಲರೂ ನಾಶವಾ-ಗುತ್ತಿದ್ದರು. ಅಲ್ಲ, ವಾಸ್ತವವಾಗಿ ನಾವು ಅವರಿಗೆ ನಮ್ಮ ಉಪದೇಶವನ್ನು ತಲುಪಿಸಿದ್ದೇವೆ. ಆದರೆ ಅವರು ಅವರಿಗೆ ನೀಡಲಾದ ಉಪದೇಶದಿಂದ ವಿಮುಖರಾಗಿದ್ದಾರೆ. | وَلَوِ ٱتَّبَعَ ٱلۡحَقُّ أَهۡوَآءَهُمۡ لَفَسَدَتِ ٱلسَّمَٰوَٰتُ وَٱلۡأَرۡضُ وَمَن فِيهِنَّۚ بَلۡ أَتَيۡنَٰهُم بِذِكۡرِهِمۡ فَهُمۡ عَن ذِكۡرِهِم مُّعۡرِضُونَ ٧١ |
| 72. | ನೀವು ಅವರೊಡನೆ ಏನಾದರೂ ಪ್ರತಿಫಲವನ್ನು ಕೇಳುತ್ತಿದ್ದೀರಾ? ನಿಮಗಂತೂ ನಿಮ್ಮ ಪರಿಪಾಲಕನು (ಅಲ್ಲಾಹು) ಕೊಡುವ | أَمۡ تَسۡـَٔلُهُمۡ خَرۡجٗا فَخَرَاجُ رَبِّكَ خَيۡرٞۖ وَهُوَ |

| | | |
|---|---|---|
| | ಪ್ರತಿಫಲವೇ ಅತ್ಯುತ್ತಮವಾಗಿದೆ. ಅವನು ಉಪಜೀವನ ಒದಗಿಸು-ವವರಲ್ಲಿ ಅತಿಶ್ರೇಷ್ಠನಾಗಿದ್ದಾನೆ. | خَيۡرُ ٱلرَّٰزِقِينَ ٧٢ |
| 73. | ನಿಶ್ಚಯವಾಗಿಯೂ ನೀವು ಅವರನ್ನು ನೇರಮಾರ್ಗಕ್ಕೆ ಕರೆಯುತ್ತಿದ್ದೀರಿ. | وَإِنَّكَ لَتَدۡعُوهُمۡ إِلَىٰ صِرَٰطٖ مُّسۡتَقِيمٖ ٧٣ |
| 74. | ನಿಶ್ಚಯವಾಗಿಯೂ ಪರಲೋಕದಲ್ಲಿ ವಿಶ್ವಾಸವಿಡದವರು ಯಾರೋ ಅವರು ಆ ಮಾರ್ಗದಿಂದ ತಪ್ಪಿಹೋಗುತ್ತಿದ್ದಾರೆ. | وَإِنَّ ٱلَّذِينَ لَا يُؤۡمِنُونَ بِٱلۡأٓخِرَةِ عَنِ ٱلصِّرَٰطِ لَنَٰكِبُونَ ٧٤ |
| 75. | ನಾವು ಅವರ ಮೇಲೆ ದಯೆ ತೋರಿ ಅವರ ಕಷ್ಟವನ್ನು ದೂರೀಕರಿಸಿದರೆ, ಅವರು ತಮ್ಮ ಅತಿರೇಕದಲ್ಲಿ ಅಂಧವಾಗಿ ವಿಹರಿಸುವುದನ್ನು ಹಟದಿಂದ ಮುಂದುವರಿಸುತ್ತಿದ್ದರು. | وَلَوۡ رَحِمۡنَٰهُمۡ وَكَشَفۡنَا مَا بِهِم مِّن ضُرّٖ لَّلَجُّواْ فِي طُغۡيَٰنِهِمۡ يَعۡمَهُونَ ٧٥ |
| 76. | ನಾವು ಅವರನ್ನು ಶಿಕ್ಷೆಯ ಮೂಲಕವೂ ಹಿಡಿದಿದ್ದೆವು. ಆದರೂ ಅವರು ತಮ್ಮ ಪರಿಪಾಲಕನಿಗೆ (ಅಲ್ಲಾಹನಿಗೆ) ಶರಣಾಗಲಿಲ್ಲ, ವಿನಮ್ರತೆಯನ್ನೂ ತೋರಲಿಲ್ಲ. | وَلَقَدۡ أَخَذۡنَٰهُم بِٱلۡعَذَابِ فَمَا ٱسۡتَكَانُواْ لِرَبِّهِمۡ وَمَا يَتَضَرَّعُونَ ٧٦ |
| 77. | ಎಲ್ಲಿಯವರೆಗೆಂದರೆ, ನಾವು ಅವರ ಮೇಲೆ ಕಠೋರ ಶಿಕ್ಷೆಯ ಬಾಗಿಲನ್ನು ತೆರೆದುಕೊಟ್ಟಾಗ, ಅಗೋ! ಅವರು ಹತಾಶರಾಗುತ್ತಿದ್ದಾರೆ. | حَتَّىٰٓ إِذَا فَتَحۡنَا عَلَيۡهِم بَابٗا ذَا عَذَابٖ شَدِيدٍ إِذَا هُمۡ فِيهِ مُبۡلِسُونَ ٧٧ |
| 78. | ನಿಮಗೆ ಕೇಳುವ ಶಕ್ತಿ, ದೃಷ್ಟಿ ಮತ್ತು ಹೃದಯಗಳನ್ನು ನೀಡಿದವನು ಅವನೇ. ನೀವು ಸ್ವಲ್ಪವೇ ಕೃತಜ್ಞರಾಗುತ್ತೀರಿ. | وَهُوَ ٱلَّذِيٓ أَنشَأَ لَكُمُ ٱلسَّمۡعَ وَٱلۡأَبۡصَٰرَ وَٱلۡأَفۡـِٔدَةَۚ قَلِيلٗا مَّا تَشۡكُرُونَ ٧٨ |
| 79. | ಅವನೇ ನಿಮ್ಮನ್ನು ಸೃಷ್ಟಿಸಿ ಭೂಮಿಯಲ್ಲಿ ಹಬ್ಬಿಸಿದವನು. ನಿಮ್ಮನ್ನು ಅವನ ಬಳಿಗೇ ಒಟ್ಟುಗೂಡಿಸಲಾಗುತ್ತದೆ. | وَهُوَ ٱلَّذِي ذَرَأَكُمۡ فِي ٱلۡأَرۡضِ وَإِلَيۡهِ تُحۡشَرُونَ ٧٩ |
| 80. | ಅವನೇ ಜೀವ ಮತ್ತು ಮರಣ ನೀಡುವವನು. ರಾತ್ರಿ ಹಗಲುಗಳ ಬದಲಾವಣೆಯು ಅವನ ನಿಯಂತ್ರಣದಲ್ಲಿದೆ. ಆದರೂ ನೀವು ಆಲೋಚಿಸುವುದಿಲ್ಲವೇ? | وَهُوَ ٱلَّذِي يُحۡيِۦ وَيُمِيتُ وَلَهُ ٱخۡتِلَٰفُ ٱلَّيۡلِ وَٱلنَّهَارِۚ أَفَلَا تَعۡقِلُونَ ٨٠ |
| 81. | ಬದಲಿಗೆ, ಅವರ ಪೂರ್ವಜರು ಹೇಳಿದಂತೆಯೇ ಅವರೂ ಹೇಳಿದರು. | بَلۡ قَالُواْ مِثۡلَ مَا قَالَ ٱلۡأَوَّلُونَ ٨١ |
| 82. | ಅವರು ಹೇಳಿದರು: "ನಾವು ಸತ್ತು ಮಣ್ಣು ಮತ್ತು ಮೂಳೆಗಳಾಗಿ ಬಿಟ್ಟ ಬಳಿಕ ನಮ್ಮನ್ನು ಪುನಃ ಜೀವ ನೀಡಿ ಎಬ್ಬಿಸಲಾಗುವುದೇ? | قَالُوٓاْ أَءِذَا مِتۡنَا وَكُنَّا تُرَابٗا وَعِظَٰمًا أَءِنَّا لَمَبۡعُوثُونَ ٨٢ |
| 83. | ಇದನ್ನು ನಮಗೂ, ನಮಗಿಂತ ಮೊದಲು ನಮ್ಮ ಪೂರ್ವಜರಿಗೂ ವಾಗ್ದಾನ ಮಾಡಲಾಗಿದೆ. ಇದು ಪ್ರಾಚೀನ ಕಾಲದ ಜನರ ಪುರಾಣಗಳಲ್ಲದೆ ಇನ್ನೇನೂ ಅಲ್ಲ." | لَقَدۡ وُعِدۡنَا نَحۡنُ وَءَابَآؤُنَا هَٰذَا مِن قَبۡلُ إِنۡ هَٰذَآ إِلَّآ أَسَٰطِيرُ ٱلۡأَوَّلِينَ ٨٣ |

| | |
|---|---|
| 84. (ಪ್ರವಾದಿಯವರೇ) ಕೇಳಿರಿ: "ಭೂಮಿ ಮತ್ತು ಅದರಲ್ಲಿರುವ ಎಲ್ಲಾ ವಸ್ತುಗಳು ಯಾರಿಗೆ ಸೇರಿದ್ದು? ನಿಮಗೆ ತಿಳಿದಿದ್ದರೆ ಹೇಳಿರಿ." | قُل لِّمَنِ ٱلۡأَرۡضُ وَمَن فِيهَآ إِن كُنتُمۡ تَعۡلَمُونَ ٨٤ |
| 85. ಅವರು ಹೇಳುತ್ತಾರೆ: "ಅಲ್ಲಾಹನಿಗೆ ಸೇರಿದ್ದು." ಕೇಳಿರಿ: "ಆದರೂ ನೀವು ಉಪದೇಶವನ್ನು ಸ್ವೀಕರಿಸುವುದಿಲ್ಲವೇ?" | سَيَقُولُونَ لِلَّهِۚ قُلۡ أَفَلَا تَذَكَّرُونَ ٨٥ |
| 86. ಕೇಳಿರಿ: "ಏಳಾಕಾಶಗಳ ಮತ್ತು ಮಹಾ ಸಿಂಹಾಸನದ ಪರಿಪಾಲಕ ಯಾರು?" | قُلۡ مَن رَّبُّ ٱلسَّمَٰوَٰتِ ٱلسَّبۡعِ وَرَبُّ ٱلۡعَرۡشِ ٱلۡعَظِيمِ ٨٦ |
| 87. ಅವರು ಹೇಳುತ್ತಾರೆ: "ಅಲ್ಲಾಹು." ಕೇಳಿರಿ: "ಆದರೂ ನೀವು ಅವನನ್ನು ಭಯಪಡುವುದಿಲ್ಲವೇ?" | سَيَقُولُونَ لِلَّهِۚ قُلۡ أَفَلَا تَتَّقُونَ ٨٧ |
| 88. ಕೇಳಿರಿ: "ಸರ್ವ ವಸ್ತುಗಳ ಸಾರ್ವಭೌಮತ್ವವು ಯಾರ ಕೈಯ್ಯಲ್ಲಿದೆ? ಅಭಯ ನೀಡುವವನು ಮತ್ತು ಅವನಿಗೆ ವಿರುದ್ಧವಾಗಿ ಅಭಯ ನೀಡಲು ಯಾರಿಗೂ ಸಾಧ್ಯವಿಲ್ಲದಂತಹವನು ಯಾರು? ನಿಮಗೆ ತಿಳಿದಿದ್ದರೆ ಹೇಳಿರಿ." | قُلۡ مَنۢ بِيَدِهِۦ مَلَكُوتُ كُلِّ شَيۡءٖ وَهُوَ يُجِيرُ وَلَا يُجَارُ عَلَيۡهِ إِن كُنتُمۡ تَعۡلَمُونَ ٨٨ |
| 89. ಅವರು ಹೇಳುತ್ತಾರೆ: "ಅಲ್ಲಾಹು." ಕೇಳಿರಿ: "ಆದರೂ ನೀವು ಮೋಡಿಗೆ ಬಲಿಯಾಗುತ್ತಿರುವುದು ಹೇಗೆ?"[1] | سَيَقُولُونَ لِلَّهِۚ قُلۡ فَأَنَّىٰ تُسۡحَرُونَ ٨٩ |
| 90. ಅಲ್ಲ, ವಾಸ್ತವವಾಗಿ ನಾವು ಅವರ ಬಳಿಗೆ ಸತ್ಯವನ್ನೇ ತಂದಿದ್ದೇವೆ. ನಿಶ್ಚಯವಾಗಿಯೂ ಅವರು ಸುಳ್ಳು ಹೇಳುತ್ತಿದ್ದಾರೆ. | بَلۡ أَتَيۡنَٰهُم بِٱلۡحَقِّ وَإِنَّهُمۡ لَكَٰذِبُونَ ٩٠ |
| 91. ಅಲ್ಲಾಹನಿಗೆ ಯಾವುದೇ ಸಂತಾನವಿಲ್ಲ. ಅವನ ಜೊತೆಗೆ ಬೇರೆ ದೇವರುಗಳೂ ಇಲ್ಲ. ಇರುತ್ತಿದ್ದರೆ ಎಲ್ಲಾ ದೇವರುಗಳೂ ಅವರು ಸೃಷ್ಟಿಸಿದ್ದನ್ನು ತೆಗೆದುಕೊಂಡು ಹೋಗುತ್ತಿದ್ದರು. ಅವರು ಪ್ರಾಬಲ್ಯ ಪಡೆಯುವುದಕ್ಕಾಗಿ ಪರಸ್ಪರ ಹೊಡೆದಾಡುತ್ತಿದ್ದರು.[2] ಅವರು ಆರೋಪಿಸುವ ಎಲ್ಲಾ ಸುಳ್ಳುಗಳಿಂದಲೂ ಅಲ್ಲಾಹು ಎಷ್ಟೋ ಪರಿಶುದ್ಧನಾಗಿದ್ದಾನೆ. | مَا ٱتَّخَذَ ٱللَّهُ مِن وَلَدٖ وَمَا كَانَ مَعَهُۥ مِنۡ إِلَٰهٍۚ إِذٗا لَّذَهَبَ كُلُّ إِلَٰهِۭ بِمَا خَلَقَ وَلَعَلَا بَعۡضُهُمۡ عَلَىٰ بَعۡضٖۚ سُبۡحَٰنَ ٱللَّهِ عَمَّا يَصِفُونَ ٩١ |
| 92. ಅವನು ದೃಶ್ಯ-ಅದೃಶ್ಯವನ್ನು ತಿಳಿದವನು. ಅವರು ಮಾಡುವ ಸಹಭಾಗಿತ್ವದಿಂದ (ಶಿರ್ಕ್‌ನಿಂದ) ಅವನು ಎಷ್ಟೋ ಉನ್ನತನಾಗಿದ್ದಾನೆ. | عَٰلِمِ ٱلۡغَيۡبِ وَٱلشَّهَٰدَةِ فَتَعَٰلَىٰ عَمَّا يُشۡرِكُونَ ٩٢ |

[1] ಈ ಸಂಪೂರ್ಣ ವಿಶ್ವವು ಅಲ್ಲಾಹನಿಗೆ ಸೇರಿದ್ದು. ಅವನೇ ಇದನ್ನು ನಿಯಂತ್ರಿಸುತ್ತಿದ್ದಾನೆ. ಪ್ರಪಂಚ ಸೃಷ್ಟಿ, ನಿರ್ವಹಣೆ ಮತ್ತು ಪರಿಪಾಲನೆಯಲ್ಲಿ ಅವನ ಜೊತೆಗೆ ಬೇರೆ ಯಾವುದೇ ಪಾಲುದಾರರಿಲ್ಲ ಎಂಬ ವಿಷಯದಲ್ಲಿ ಸತ್ಯನಿಷೇಧಿಗಳಿಗೆ ಭಿನ್ನಾಭಿಪ್ರಾಯವಿರಲಿಲ್ಲ. ಈ ಎಲ್ಲಾ ವಿಷಯಗಳಲ್ಲಿ ಅವರು ಅಲ್ಲಾಹನನ್ನು ಏಕೈಕನೆಂದು ಒಪ್ಪಿಕೊಳ್ಳುತ್ತಿದ್ದರು.

[2] ಅಲ್ಲಾಹನ ಹೊರತು ಬೇರೆ ಸೃಷ್ಟಿಕರ್ತರು ಇರುತ್ತಿದ್ದರೆ ಪ್ರತಿಯೊಬ್ಬ ಸೃಷ್ಟಿಕರ್ತನೂ ತಾನು ಸೃಷ್ಟಿಸಿದ್ದನ್ನು ತಾನೇ ನಿಯಂತ್ರಿಸುತ್ತಿದ್ದನು. ಅಷ್ಟೇ ಅಲ್ಲ, ಅವರು ಪರಸ್ಪರ ಮೇಲುಗೈ ಸಾಧಿಸಲು ಹೊಡೆದಾಡುತ್ತಿದ್ದರು. ಇದರಿಂದ ಸಂಪೂರ್ಣ ವಿಶ್ವದ ವ್ಯವಸ್ಥೆಯು ಕುಸಿಯುತ್ತಿತ್ತು.

93. ಹೇಳಿರಿ: "ನನ್ನ ಪರಿಪಾಲಕನೇ! ಇವರಿಗೆ ವಾಗ್ದಾನ ಮಾಡಲಾಗುವ ಶಿಕ್ಷೆಯನ್ನು ನನಗೆ ತೋರಿಸಿಕೊಡುವುದಾದರೆ,

قُل رَّبِّ إِمَّا تُرِيَنِّي مَا يُوعَدُونَ ٩٣

94. ನನ್ನ ಪರಿಪಾಲಕನೇ! ನನ್ನನ್ನು ಅಕ್ರಮಿಗಳಾದ ಜನರಲ್ಲಿ ಸೇರಿಸಬೇಡ."

رَبِّ فَلَا تَجۡعَلۡنِي فِي ٱلۡقَوۡمِ ٱلظَّٰلِمِينَ ٩٤

95. ಅವರಿಗೆ ವಾಗ್ದಾನ ಮಾಡುತ್ತಿರುವ ಶಿಕ್ಷೆಯನ್ನು ನಿಮಗೆ ತೋರಿಸಿಕೊಡುವ ಸಾಮರ್ಥ್ಯ ಖಂಡಿತ ನಮಗಿದೆ.

وَإِنَّا عَلَىٰٓ أَن نُّرِيَكَ مَا نَعِدُهُمۡ لَقَٰدِرُونَ ٩٥

96. ನೀವು ಒಳಿತಿನ ಮೂಲಕ ಕೆಡುಕನ್ನು ದೂರೀಕರಿಸಿರಿ. ಅವರು ವರ್ಣಿಸುವ ವಿಷಯಗಳ ಬಗ್ಗೆ ನಮಗೆ ಬಹಳ ಚೆನ್ನಾಗಿ ತಿಳಿದಿದೆ.

ٱدۡفَعۡ بِٱلَّتِي هِيَ أَحۡسَنُ ٱلسَّيِّئَةَۚ نَحۡنُ أَعۡلَمُ بِمَا يَصِفُونَ ٩٦

97. ಹೇಳಿರಿ: "ನನ್ನ ಪರಿಪಾಲಕನೇ! ಶೈತಾನರ ದುರ್ವಿಚಾರಗಳಿಂದ ನಾನು ನಿನ್ನಲ್ಲಿ ಅಭಯಕೋರುತ್ತೇನೆ.

وَقُل رَّبِّ أَعُوذُ بِكَ مِنۡ هَمَزَٰتِ ٱلشَّيَٰطِينِ ٩٧

98. ಓ ನನ್ನ ಪರಿಪಾಲಕನೇ! ಅವರು ನನ್ನ ಬಳಿ ಬರುವುದರಿಂದಲೂ ನಾನು ನಿನ್ನಲ್ಲಿ ಅಭಯಕೋರುತ್ತೇನೆ."

وَأَعُوذُ بِكَ رَبِّ أَن يَحۡضُرُونِ ٩٨

99. ಎಲ್ಲಿಯವರೆಗೆಂದರೆ, ಅವರಲ್ಲೊಬ್ಬನಿಗೆ ಸಾವು ಸನ್ನಿಹಿತವಾದಾಗ, ಅವನು ಹೇಳುವನು: "ಓ ನನ್ನ ಪರಿಪಾಲಕನೇ! ನನ್ನನ್ನು ಹಿಂದಕ್ಕೆ ಕಳಿಸು.

حَتَّىٰٓ إِذَا جَآءَ أَحَدَهُمُ ٱلۡمَوۡتُ قَالَ رَبِّ ٱرۡجِعُونِ ٩٩

100. ನಾನು ಮಾಡದೆ ಬಿಟ್ಟಿರುವ ಸತ್ಕರ್ಮಗಳನ್ನು ನಿರ್ವಹಿಸಲು." ಇಲ್ಲ, ಎಂದಿಗೂ ಇಲ್ಲ! ಅದು ಕೇವಲ ಒಂದು ಮಾತು ಮಾತ್ರ. ಅವನು ಅದನ್ನು ಹೇಳುತ್ತಲೇ ಇರುವನು. ಅವರನ್ನು ಜೀವ ನೀಡಿ ಎಬ್ಬಿಸಲಾಗುವ ದಿನದ ತನಕ ಅವರ ಹಿಂದೆ ಒಂದು ಪರದೆಯಿದೆ.[1]

لَعَلِّيٓ أَعۡمَلُ صَٰلِحٗا فِيمَا تَرَكۡتُۚ كَلَّآۚ إِنَّهَا كَلِمَةٌ هُوَ قَآئِلُهَاۖ وَمِن وَرَآئِهِم بَرۡزَخٌ إِلَىٰ يَوۡمِ يُبۡعَثُونَ ١٠٠

101. ಕಹಳೆಯಲ್ಲಿ ಊದಲಾದರೆ, ಅಂದು ಅವರ ನಡುವೆ ಯಾವುದೇ ಸಂಬಂಧಗಳು ಇರುವುದಿಲ್ಲ. ಅವರು ಪರಸ್ಪರ ವಿಚಾರಿಸುವುದೂ ಇಲ್ಲ.

فَإِذَا نُفِخَ فِي ٱلصُّورِ فَلَآ أَنسَابَ بَيۡنَهُمۡ يَوۡمَئِذٖ وَلَا يَتَسَآءَلُونَ ١٠١

102. ಯಾರ ತಕ್ಕಡಿಗಳು ಭಾರವಾಗುತ್ತದೋ ಅವರೇ ಯಶಸ್ವಿಯಾದವರು.

فَمَن ثَقُلَتۡ مَوَٰزِينُهُۥ فَأُوْلَٰٓئِكَ هُمُ ٱلۡمُفۡلِحُونَ ١٠٢

103. ಯಾರ ತಕ್ಕಡಿಗಳು ಹಗುರವಾಗುತ್ತದೋ ಅವರೇ ಸ್ವಯಂ ನಷ್ಟ ಹೊಂದಿದವರು. ಅವರು ನರಕಾಗ್ನಿಯಲ್ಲಿ ಶಾಶ್ವತವಾಗಿ ವಾಸಿಸುವವರು.

وَمَنۡ خَفَّتۡ مَوَٰزِينُهُۥ فَأُوْلَٰٓئِكَ ٱلَّذِينَ خَسِرُوٓاْ أَنفُسَهُمۡ فِي جَهَنَّمَ خَٰلِدُونَ ١٠٣

[1] ಒಮ್ಮೆ ಪರಲೋಕವನ್ನು ಪ್ರವೇಶಿಸಿದರೆ ನಂತರ ಪುನಃ ಭೂಮಿಗೆ ಬರಲು ಯಾರಿಗೂ ಅವಕಾಶವಿಲ್ಲ.

| | |
|---|---|
| **104.** ನರಕದ ಬೆಂಕಿಯು ಅವರ ಮುಖಗಳನ್ನು ಸುಟ್ಟು ಬಿಡುವುದು. ಅವರು ಅದರಲ್ಲಿ ವಿಕಾರವಾಗಿ ಹಲ್ಲುಕಿರಿಯುವರು.[1] | تَلۡفَحُ وُجُوهَهُمُ ٱلنَّارُ وَهُمۡ فِيهَا كَٰلِحُونَ ١٠٤ |
| **105.** (ಅವರೊಂದಿಗೆ ಕೇಳಲಾಗುವುದು): "ನನ್ನ ವಚನಗಳನ್ನು ನಿಮಗೆ ಓದಿಕೊಡಲಾಗುವಾಗ ನೀವು ಅದನ್ನು ನಿಷೇಧಿಸುತ್ತಿರಲಿಲ್ಲವೇ?" | أَلَمۡ تَكُنۡ ءَايَٰتِي تُتۡلَىٰ عَلَيۡكُمۡ فَكُنتُم بِهَا تُكَذِّبُونَ ١٠٥ |
| **106.** ಅವರು ಹೇಳುವರು: "ನಮ್ಮ ಪರಿಪಾಲಕನೇ! ನಮ್ಮ ದುರ್ಗತಿಯು ನಮ್ಮನ್ನು ಮಣಿಸಿದೆ. ನಾವು ದಾರಿತಪ್ಪಿದ ಜನರಾಗಿದ್ದೆವು. | قَالُواْ رَبَّنَا غَلَبَتۡ عَلَيۡنَا شِقۡوَتُنَا وَكُنَّا قَوۡمٗا ضَآلِّينَ ١٠٦ |
| **107.** ನಮ್ಮ ಪರಿಪಾಲಕನೇ! ನಮ್ಮನ್ನು ಇಲ್ಲಿಂದ ಹೊರಗೆ ಬಿಡು. ನಾವೇನಾದರೂ ಪುನಃ ಅದೇ ದುರ್ಮಾರ್ಗಕ್ಕೆ ಮರಳಿದರೆ ನಿಜವಾಗಿಯೂ ನಾವೇ ಅಕ್ರಮಿಗಳು." | رَبَّنَآ أَخۡرِجۡنَا مِنۡهَا فَإِنۡ عُدۡنَا فَإِنَّا ظَٰلِمُونَ ١٠٧ |
| **108.** ಅಲ್ಲಾಹು ಹೇಳುವನು: "ಅವಮಾನವನ್ನು ಸಹಿಸುತ್ತಾ ಇಲ್ಲೇ ಬಿದ್ದಿರಿ. ನನ್ನೊಡನೆ ಮಾತನಾಡಬೇಡಿ. | قَالَ ٱخۡسَـُٔواْ فِيهَا وَلَا تُكَلِّمُونِ ١٠٨ |
| **109.** ನಿಶ್ಚಯವಾಗಿಯೂ, ನನ್ನ ದಾಸರಲ್ಲಿ ಒಂದು ಗುಂಪು ಜನರು ಹೇಳುತ್ತಿದ್ದರು: "ನಮ್ಮ ಪರಿಪಾಲಕನೇ! ನಾವು ವಿಶ್ವಾಸವಿಟ್ಟಿ-ದ್ದೇವೆ. ಆದ್ದರಿಂದ ನಮ್ಮನ್ನು ಕ್ಷಮಿಸು ಮತ್ತು ನಮ್ಮ ಮೇಲೆ ದಯೆ ತೋರು. ನೀನು ದಯೆ ತೋರುವವರಲ್ಲಿ ಅತ್ಯುತ್ತಮನಾಗಿರುವೆ." | إِنَّهُۥ كَانَ فَرِيقٞ مِّنۡ عِبَادِي يَقُولُونَ رَبَّنَآ ءَامَنَّا فَٱغۡفِرۡ لَنَا وَٱرۡحَمۡنَا وَأَنتَ خَيۡرُ ٱلرَّٰحِمِينَ ١٠٩ |
| **110.** ಆಗ ನೀವು ಅವರನ್ನು ತಮಾಷೆಯ ವಸ್ತುವಾಗಿ ಮಾಡಿಕೊಂಡಿರಿ. ಎಲ್ಲಿಯವರೆಗೆಂದರೆ, (ಈ ತಮಾಷೆಯು) ನಿಮಗೆ ನನ್ನ ನೆನಪನ್ನೇ ಮರೆಸಿಬಿಟ್ಟಿತು. ನೀವು ಅವರನ್ನು ಅಣಕಿಸಿ ನಗುತ್ತಿದ್ದಿರಿ. | فَٱتَّخَذۡتُمُوهُمۡ سِخۡرِيًّا حَتَّىٰٓ أَنسَوۡكُمۡ ذِكۡرِي وَكُنتُم مِّنۡهُمۡ تَضۡحَكُونَ ١١٠ |
| **111.** ಅವರು ತಾಳ್ಮೆಯಿಂದ ಜೀವಿಸಿದ ಕಾರಣ ಇಂದು ನಾನು ಅವರಿಗೆ ಪ್ರತಿಫಲವನ್ನು ನೀಡಿದ್ದೇನೆ. ನಿಶ್ಚಯವಾಗಿಯೂ ಅವರೇ ವಿಜಯ ಗಳಿಸಿದವರು." | إِنِّي جَزَيۡتُهُمُ ٱلۡيَوۡمَ بِمَا صَبَرُوٓاْ أَنَّهُمۡ هُمُ ٱلۡفَآئِزُونَ ١١١ |
| **112.** ಅಲ್ಲಾಹು ಕೇಳುವನು: "ನೀವು ಭೂಮಿಯಲ್ಲಿ ಎಷ್ಟು ವರ್ಷಗಳ ಕಾಲ ವಾಸವಾಗಿದ್ದಿರಿ?" | قَٰلَ كَمۡ لَبِثۡتُمۡ فِي ٱلۡأَرۡضِ عَدَدَ سِنِينَ ١١٢ |
| **113.** ಅವರು ಹೇಳುವರು: "ನಾವು ಒಂದು ದಿನ ಅಥವಾ ದಿನದ ಸ್ವಲ್ಪ ಭಾಗ ಮಾತ್ರ ವಾಸವಾಗಿದ್ದೆವು. ಎಣಿಕೆ ಮಾಡಿದವರನ್ನು ಕೂಡ ಕೇಳಿ ನೋಡು." | قَالُواْ لَبِثۡنَا يَوۡمًا أَوۡ بَعۡضَ يَوۡمٖ فَسۡـَٔلِ ٱلۡعَآدِّينَ ١١٣ |
| **114.** ಅಲ್ಲಾಹು ಹೇಳುವನು: "ನೀವು ಸ್ವಲ್ಪ ಸಮಯ ಮಾತ್ರ ವಾಸವಾಗಿದ್ದಿರಿ. ನಿಮಗೆ ಮೊದಲೇ ತಿಳಿದಿರುತ್ತಿದ್ದರೆ! | قَٰلَ إِن لَّبِثۡتُمۡ إِلَّا قَلِيلٗاۖ لَّوۡ أَنَّكُمۡ كُنتُمۡ تَعۡلَمُونَ ١١٤ |

[1] ನರಕದ ಬೆಂಕಿಯು ಅವರ ಮುಖವನ್ನು ಸುಟ್ಟು ಬಿಡುತ್ತದೆ. ಇದರಿಂದ ಅವರ ತುಟಿಗಳು ಬೆಂಕಿಗೆ ಆಹುತಿಯಾಗಿ, ತುಟಿಗಳಿಲ್ಲದ ಕಾರಣ ಅವರ ಹಲ್ಲುಗಳು ವಿಕಾರವಾಗಿ ಕಿರಿಯುವಂತೆ ಕಾಣುವುದು.

115. ನಾವು ನಿಮ್ಮನ್ನು ವ್ಯರ್ಥವಾಗಿ ಸೃಷ್ಟಿಸಿದ್ದೇವೆ ಮತ್ತು ನೀವು ನಮ್ಮ ಬಳಿಗೆ ಮರಳಿ ಬರುವುದಿಲ್ಲವೆಂದು ನೀವು ಭಾವಿಸಿದ್ದೀರಾ?"

أَفَحَسِبۡتُمۡ أَنَّمَا خَلَقۡنَٰكُمۡ عَبَثٗا وَأَنَّكُمۡ إِلَيۡنَا لَا تُرۡجَعُونَ ۝١١٥

116. ನೈಜ ಸಾಮ್ರಾಟನಾಗಿರುವ ಅಲ್ಲಾಹು ಪರಮೋನ್ನತನು. ಅವನ ಹೊರತು ಆರಾಧನೆಗೆ ಅರ್ಹರಾದ ಬೇರೆ ದೇವರಿಲ್ಲ. ಅವನು ಗೌರವಾನ್ವಿತ ಸಿಂಹಾಸನದ ಪರಿಪಾಲಕನಾಗಿದ್ದಾನೆ.

فَتَعَٰلَى ٱللَّهُ ٱلۡمَلِكُ ٱلۡحَقُّۖ لَآ إِلَٰهَ إِلَّا هُوَ رَبُّ ٱلۡعَرۡشِ ٱلۡكَرِيمِ ۝١١٦

117. ಯಾರು ಅಲ್ಲಾಹನ ಜೊತೆಗೆ ಬೇರೆ ದೇವರನ್ನು ಕರೆದು ಪ್ರಾರ್ಥಿಸುತ್ತಾನೋ—ಹಾಗೆ ಪ್ರಾರ್ಥಿಸಲು ಅವನ ಬಳಿ ಯಾವುದೇ ಸಾಕ್ಷ್ಯಾಧಾರವಿಲ್ಲ—ಅವನ ವಿಚಾರಣೆಯು ಅವನ ಪರಿಪಾಲಕನ (ಅಲ್ಲಾಹನ) ಬಳಿಯಲ್ಲಿದೆ. ನಿಶ್ಚಯವಾಗಿಯೂ ಸತ್ಯನಿಷೇಧಿಗಳು ಯಶಸ್ವಿಯಾಗುವುದಿಲ್ಲ.[1]

وَمَن يَدۡعُ مَعَ ٱللَّهِ إِلَٰهًا ءَاخَرَ لَا بُرۡهَٰنَ لَهُۥ بِهِۦ فَإِنَّمَا حِسَابُهُۥ عِندَ رَبِّهِۦٓۚ إِنَّهُۥ لَا يُفۡلِحُ ٱلۡكَٰفِرُونَ ۝١١٧

118. ಹೇಳಿರಿ: "ನನ್ನ ಪರಿಪಾಲಕನೇ! ನನ್ನನ್ನು ಕ್ಷಮಿಸು. ನನಗೆ ದಯೆ ತೋರು. ದಯೆ ತೋರುವವರಲ್ಲಿ ನೀನು ಅತ್ಯುತ್ತಮನಾಗಿರುವೆ."

وَقُل رَّبِّ ٱغۡفِرۡ وَٱرۡحَمۡ وَأَنتَ خَيۡرُ ٱلرَّٰحِمِينَ ۝١١٨

# 24. ಅನ್ನೂರ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಇದು ನಾವು ಅವತೀರ್ಣಗೊಳಿಸಿದ ಮತ್ತು ನಿಗದಿಗೊಳಿಸಿದ ಒಂದು ಅಧ್ಯಾಯವಾಗಿದೆ. ನಾವು ಇದರಲ್ಲಿ ಸ್ಪಷ್ಟವಾದ ವಚನಗಳನ್ನು ಅವತೀರ್ಣಗೊಳಿಸಿದ್ದೇವೆ. ನೀವು ಉಪದೇಶ ಪಡೆಯುವುದಕ್ಕಾಗಿ.

سُورَةٌ أَنزَلۡنَٰهَا وَفَرَضۡنَٰهَا وَأَنزَلۡنَا فِيهَآ ءَايَٰتِۭ بَيِّنَٰتٖ لَّعَلَّكُمۡ تَذَكَّرُونَ ۝١

2. ವ್ಯಭಿಚಾರ ಮಾಡುವ ಸ್ತ್ರೀ-ಪುರುಷರಲ್ಲಿ ಪ್ರತಿಯೊಬ್ಬರಿಗೂ ನೂರು ಚಡಿಯೇಟು ನೀಡಿರಿ.[2] ಅವರ ಮೇಲೆ ಅಲ್ಲಾಹನ ಕಾನೂನನ್ನು ಜಾರಿಗೊಳಿಸುವ ವಿಷಯದಲ್ಲಿ ನೀವು ಸ್ವಲ್ಪವೂ ಅನುಕಂಪ ತೋರಬಾರದು. ನಿಮಗೆ ಅಲ್ಲಾಹನಲ್ಲಿ ಮತ್ತು ಅಂತ್ಯದಿನದಲ್ಲಿ ವಿಶ್ವಾಸವಿದ್ದರೆ. ಅವರಿಗೆ ಶಿಕ್ಷೆ ನೀಡುವಾಗ ಸತ್ಯವಿಶ್ವಾಸಿಗಳ ಒಂದು ಗುಂಪು ಅಲ್ಲಿ ಉಪಸ್ಥಿತರಿರಲಿ.

ٱلزَّانِيَةُ وَٱلزَّانِي فَٱجۡلِدُواْ كُلَّ وَٰحِدٖ مِّنۡهُمَا مِاْئَةَ جَلۡدَةٖۖ وَلَا تَأۡخُذۡكُم بِهِمَا رَأۡفَةٞ فِي دِينِ ٱللَّهِ إِن كُنتُمۡ تُؤۡمِنُونَ بِٱللَّهِ وَٱلۡيَوۡمِ ٱلۡأٓخِرِۖ وَلۡيَشۡهَدۡ عَذَابَهُمَا طَآئِفَةٞ مِّنَ ٱلۡمُؤۡمِنِينَ ۝٢

---

[1] ಅಲ್ಲಾಹನನ್ನು ಬಿಟ್ಟು ಬೇರೆ ದೇವರನ್ನು (ಅವರು ಪ್ರವಾದಿಗಳು, ದೇವದೂತರು ಅಥವಾ ಮಹಾಪುರುಷರಾಗಿದ್ದರೂ ಸಹ) ಕರೆದು ಪ್ರಾರ್ಥಿಸಲು ಮತ್ತು ಅವರನ್ನು ಆರಾಧಿಸಲು ಯಾವುದೇ ಆಧಾರವಿಲ್ಲವೆಂದು ಅಲ್ಲಾಹು ಇಲ್ಲಿ ಬಹಳ ಸ್ಪಷ್ಟವಾಗಿ ಹೇಳಿದ್ದಾನೆ.

[2] ವ್ಯಭಿಚಾರ ಮಾಡಿದವರು ಸ್ವಯಂ ತಪ್ಪೊಪ್ಪಿಕೊಂಡರೆ, ಅಥವಾ ಅವರು ವ್ಯಭಿಚಾರ ಮಾಡಿದ್ದನ್ನು ನೋಡಿದ್ದೇವೆಂದು ನಾಲ್ಕು ಮಂದಿ ಸಾಕ್ಷಿ ನುಡಿದರೆ ಮಾತ್ರ ವ್ಯಭಿಚಾರದ ಶಿಕ್ಷೆ ಜಾರಿ ಮಾಡಲಾಗುತ್ತದೆ. ಇಲ್ಲಿ ಹೇಳಿರುವುದು ವ್ಯಭಿಚಾರ ಮಾಡುವ ಅವಿವಾಹಿತ ಪುರುಷ ಮತ್ತು ಮಹಿಳೆಗೆ ನೀಡಲಾಗುವ ಶಿಕ್ಷೆ. ವ್ಯಭಿಚಾರ ಮಾಡಿದವರು ವಿವಾಹಿತರಾಗಿದ್ದರೆ ಅವರನ್ನು ಕಲ್ಲೆಸೆದು ಸಾಯಿಸಲಾಗುತ್ತದೆ.

| | | |
|---|---|---|
| 3. | ವ್ಯಭಿಚಾರಿ ಪುರುಷನು ವ್ಯಭಿಚಾರಿ ಮಹಿಳೆ ಅಥವಾ ಬಹುದೇವಾರಾಧಕಿ ಮಹಿಳೆಯ ಹೊರತಾಗಿ ಬೇರೆ ಯಾರನ್ನೂ ವಿವಾಹವಾಗುವುದಿಲ್ಲ. ವ್ಯಭಿಚಾರಿ ಮಹಿಳೆ ವ್ಯಭಿಚಾರಿ ಪುರುಷ ಅಥವಾ ಬಹುದೇವಾರಾಧಕ ಪುರುಷನ ಹೊರತಾಗಿ ಬೇರೆ ಯಾರನ್ನೂ ವಿವಾಹವಾಗುವುದಿಲ್ಲ. ಸತ್ಯವಿಶ್ವಾಸಿಗಳಿಗೆ ಇಂತಹವರನ್ನು ವಿವಾಹವಾಗುವುದು ನಿಷಿದ್ಧವಾಗಿದೆ. | ٱلزَّانِي لَا يَنكِحُ إِلَّا زَانِيَةً أَوۡ مُشۡرِكَةٗ وَٱلزَّانِيَةُ لَا يَنكِحُهَآ إِلَّا زَانٍ أَوۡ مُشۡرِكٞۚ وَحُرِّمَ ذَٰلِكَ عَلَى ٱلۡمُؤۡمِنِينَ ٣ |
| 4. | ಪರಿಶುದ್ಧ ಮಹಿಳೆಯರ ಮೇಲೆ ವ್ಯಭಿಚಾರದ ಆರೋಪ ಮಾಡಿ, ನಂತರ (ಅದನ್ನು ಸಾಬೀತುಪಡಿಸಲು) ನಾಲ್ಕು ಸಾಕ್ಷಿಗಳನ್ನು ತರಲು ಸಾಧ್ಯವಾಗದವರಿಗೆ ಎಂಬತ್ತು ಚಡಿಯೇಟು ನೀಡಿರಿ. ಅವರ ಸಾಕ್ಷ್ಯವನ್ನು ಎಂದಿಗೂ ಸ್ವೀಕರಿಸಬೇಡಿ. ಅವರೇ ನಿಜವಾದ ದುಷ್ಕರ್ಮಿಗಳು. | وَٱلَّذِينَ يَرۡمُونَ ٱلۡمُحۡصَنَٰتِ ثُمَّ لَمۡ يَأۡتُواْ بِأَرۡبَعَةِ شُهَدَآءَ فَٱجۡلِدُوهُمۡ ثَمَٰنِينَ جَلۡدَةٗ وَلَا تَقۡبَلُواْ لَهُمۡ شَهَٰدَةً أَبَدٗاۚ وَأُوْلَٰٓئِكَ هُمُ ٱلۡفَٰسِقُونَ ٤ |
| 5. | ಆದರೆ ಅದರ ನಂತರ ಪಶ್ಚಾತ್ತಾಪಪಟ್ಟು ಸುಧಾರಿಸಿಕೊಂಡವರು ಇದಕ್ಕೆ ಹೊರತಾಗಿದ್ದಾರೆ. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು, ದಯೆ ತೋರುವವನಾಗಿದ್ದಾನೆ. | إِلَّا ٱلَّذِينَ تَابُواْ مِنۢ بَعۡدِ ذَٰلِكَ وَأَصۡلَحُواْ فَإِنَّ ٱللَّهَ غَفُورٞ رَّحِيمٞ ٥ |
| 6. | ತಮ್ಮ ಪತ್ನಿಯರ ಮೇಲೆ ವ್ಯಭಿಚಾರದ ಆರೋಪ ಮಾಡುವವರು ಮತ್ತು ಅದಕ್ಕೆ ಸ್ವತಃ ಅವರ ಹೊರತು ಬೇರೆ ಸಾಕ್ಷಿಯಿಲ್ಲದವರು ಯಾರೋ—ಅವರಲ್ಲಿ ಪ್ರತಿಯೊಬ್ಬರೂ (ತಮ್ಮ ಆರೋಪವನ್ನು ಸಾಬೀತುಪಡಿಸಲು) "ಖಂಡಿತವಾಗಿಯೂ ನಾನು ಸತ್ಯ ಹೇಳುವವರಲ್ಲೇ ಸೇರಿದ್ದೇನೆ" ಎಂದು ಅಲ್ಲಾಹನ ಹೆಸರಲ್ಲಿ ನಾಲ್ಕು ಬಾರಿ ಆಣೆ ಮಾಡಿ ಹೇಳಬೇಕು. | وَٱلَّذِينَ يَرۡمُونَ أَزۡوَٰجَهُمۡ وَلَمۡ يَكُن لَّهُمۡ شُهَدَآءُ إِلَّآ أَنفُسُهُمۡ فَشَهَٰدَةُ أَحَدِهِمۡ أَرۡبَعُ شَهَٰدَٰتِۭ بِٱللَّهِ إِنَّهُۥ لَمِنَ ٱلصَّٰدِقِينَ ٦ |
| 7. | ಐದನೆಯ ಬಾರಿ ಅವನು, "ನಾನು ಸುಳ್ಳು ಹೇಳುವವರಲ್ಲಿ ಸೇರಿದ್ದರೆ ಅಲ್ಲಾಹನ ಶಾಪ ನನ್ನ ಮೇಲಿರಲಿ" ಎಂದು ಆಣೆ ಮಾಡಿ ಹೇಳಬೇಕು. | وَٱلۡخَٰمِسَةُ أَنَّ لَعۡنَتَ ٱللَّهِ عَلَيۡهِ إِن كَانَ مِنَ ٱلۡكَٰذِبِينَ ٧ |
| 8. | ಅವಳಿಗೆ ಶಿಕ್ಷೆಯಿಂದ ಮುಕ್ತಿ ಸಿಗಬೇಕಾದರೆ, ಅವಳು ನಾಲ್ಕು ಬಾರಿ ಅಲ್ಲಾಹನ ಮೇಲೆ ಆಣೆ ಮಾಡಿ, "ಅವನು ಸುಳ್ಳು ಹೇಳುವವರಲ್ಲಿ ಸೇರಿದ್ದಾನೆ" ಎಂದು ಹೇಳಬೇಕು. | وَيَدۡرَؤُاْ عَنۡهَا ٱلۡعَذَابَ أَن تَشۡهَدَ أَرۡبَعَ شَهَٰدَٰتِۭ بِٱللَّهِ إِنَّهُۥ لَمِنَ ٱلۡكَٰذِبِينَ ٨ |
| 9. | ಐದನೆಯ ಬಾರಿ ಅವಳು, "ಅವನು ಸತ್ಯ ಹೇಳುವವರಲ್ಲಿ ಸೇರಿದ್ದರೆ ಅಲ್ಲಾಹನ ಕೋಪ ನನ್ನ ಮೇಲಿರಲಿ" ಎಂದು ಆಣೆ ಮಾಡಿ ಹೇಳಬೇಕು. | وَٱلۡخَٰمِسَةَ أَنَّ غَضَبَ ٱللَّهِ عَلَيۡهَآ إِن كَانَ مِنَ ٱلصَّٰدِقِينَ ٩ |
| 10. | ನಿಮ್ಮ ಮೇಲೆ ಅಲ್ಲಾಹನ ಔದಾರ್ಯ ಮತ್ತು ದಯೆಯಿಲ್ಲದಿರುತ್ತಿ-ದ್ದರೆ (ನಿಮಗೆ ಬಹಳ ಕಷ್ಟಗಳನ್ನು ಅನುಭವಿಸಬೇಕಾಗಿ ಬರುತ್ತಿತ್ತು). | وَلَوۡلَا فَضۡلُ ٱللَّهِ عَلَيۡكُمۡ وَرَحۡمَتُهُۥ وَأَنَّ ٱللَّهَ تَوَّابٌ حَكِيمٌ ١٠ |

ನಿಶ್ಚಯವಾಗಿಯೂ ಅಲ್ಲಾಹು ಪಶ್ಚಾತ್ತಾಪ ಸ್ವೀಕರಿಸುವವನು ಮತ್ತು ವಿವೇಕಪೂರ್ಣನಾಗಿದ್ದಾನೆ.

---

11. ನಿಶ್ಚಯವಾಗಿಯೂ ಆ ಸುಳ್ಳು ಸುದ್ದಿಯನ್ನು ತಂದವರು ನಿಮ್ಮಲ್ಲೇ ಇರುವ ಒಂದು ಗುಂಪಿನವರಾಗಿದ್ದಾರೆ. ಅದು ನಿಮಗೆ ಕೆಡುಕೆಂದು ಭಾವಿಸಬೇಡಿ. ಬದಲಿಗೆ, ಅದು ನಿಮಗೆ ಒಳಿತಾಗಿದೆ. ಅವರಲ್ಲಿ ಪ್ರತಿಯೊಬ್ಬರಿಗೂ ಅವರು ಮಾಡಿದ ಪಾಪಕ್ಕೆ ತಕ್ಕಂತೆ ಶಿಕ್ಷೆಯಿದೆ. ಅವರಲ್ಲಿ ಹಿರಿಯ ಪಾತ್ರ ವಹಿಸಿದವನಾರೋ ಅವನಿಗೆ ಘೋರ ಶಿಕ್ಷೆಯಿದೆ.[1]

إِنَّ ٱلَّذِينَ جَآءُو بِٱلۡإِفۡكِ عُصۡبَةٞ مِّنكُمۡۚ لَا تَحۡسَبُوهُ شَرّٗا لَّكُمۖ بَلۡ هُوَ خَيۡرٞ لَّكُمۡۚ لِكُلِّ ٱمۡرِيٕٖ مِّنۡهُم مَّا ٱكۡتَسَبَ مِنَ ٱلۡإِثۡمِۚ وَٱلَّذِي تَوَلَّىٰ كِبۡرَهُۥ مِنۡهُمۡ لَهُۥ عَذَابٌ عَظِيمٞ ١١

---

12. ಆ ಸುದ್ದಿಯನ್ನು ಕೇಳಿದಾಗ ಸತ್ಯವಿಶ್ವಾಸಿ ಪುರುಷರು ಮತ್ತು ಮಹಿಳೆಯರು ತಮ್ಮದೇ ಜನರ ಬಗ್ಗೆ ಒಳ್ಳೆಯ ಅಭಿಪ್ರಾಯವನ್ನಿ-ಟ್ಟುಕೊಂಡು, "ಇದು ಸ್ಪಷ್ಟ ಸುಳ್ಳಾರೋಪವಾಗಿದೆ" ಎಂದು ಏಕೆ ಹೇಳಲಿಲ್ಲ?

لَّوۡلَآ إِذۡ سَمِعۡتُمُوهُ ظَنَّ ٱلۡمُؤۡمِنُونَ وَٱلۡمُؤۡمِنَٰتُ بِأَنفُسِهِمۡ خَيۡرٗا وَقَالُواْ هَٰذَآ إِفۡكٞ مُّبِينٞ ١٢

---

13. ಅವರು ಅದಕ್ಕೆ ನಾಲ್ಕು ಸಾಕ್ಷಿಗಳನ್ನು ಏಕೆ ತರಲಿಲ್ಲ? ಅವರು ಸಾಕ್ಷಿಗಳನ್ನು ತರದೇ ಇರುವುದರಿಂದ ಅಲ್ಲಾಹನ ದೃಷ್ಟಿಯಲ್ಲಿ ಅವರೇ ಸುಳ್ಳುಗಾರರಾಗಿದ್ದಾರೆ.

لَّوۡلَا جَآءُو عَلَيۡهِ بِأَرۡبَعَةِ شُهَدَآءَۚ فَإِذۡ لَمۡ يَأۡتُواْ بِٱلشُّهَدَآءِ فَأُوْلَٰٓئِكَ عِندَ ٱللَّهِ هُمُ ٱلۡكَٰذِبُونَ ١٣

---

14. ನಿಮ್ಮ ಮೇಲೆ ಇಹಲೋಕದಲ್ಲಿ ಮತ್ತು ಪರಲೋಕದಲ್ಲಿ ಅಲ್ಲಾಹನ ಔದಾರ್ಯ ಮತ್ತು ದಯೆಯಿಲ್ಲದಿರುತ್ತಿದ್ದರೆ, ನೀವು ತೊಡಗಿಕೊಂಡ ಈ ಚರ್ಚೆಯ ಕಾರಣದಿಂದಾಗಿ ಘೋರ ಶಿಕ್ಷೆಯು ನಿಮಗೆ ಸ್ಪರ್ಶಿಸುತ್ತಿತ್ತು.

وَلَوۡلَا فَضۡلُ ٱللَّهِ عَلَيۡكُمۡ وَرَحۡمَتُهُۥ فِي ٱلدُّنۡيَا وَٱلۡأٓخِرَةِ لَمَسَّكُمۡ فِي مَآ أَفَضۡتُمۡ فِيهِ عَذَابٌ عَظِيمٌ ١٤

---

15. ನೀವು ಅದನ್ನು ನಿಮ್ಮ ನಾಲಗೆಗಳಿಂದ ಸ್ವೀಕರಿಸುತ್ತಲೂ ಮತ್ತು ನಿಮಗೆ ಯಾವುದೇ ಜ್ಞಾನವಿಲ್ಲದ ಆ ವಿಷಯವನ್ನು ನಿಮ್ಮ ಬಾಯಿ ಮೂಲಕ ಮಾತನಾಡುತ್ತಲೂ ಇದ್ದ ಸಂದರ್ಭ(ವನ್ನು ಸ್ಮರಿಸಿ). ನೀವು ಅದನ್ನು ಕ್ಷುಲ್ಲಕವೆಂದು ಭಾವಿಸಿರಬಹುದು. ಆದರೆ ಅಲ್ಲಾಹನ ದೃಷ್ಟಿಯಲ್ಲಿ ಅದು ಗಂಭೀರ ವಿಷಯವಾಗಿದೆ.

إِذۡ تَلَقَّوۡنَهُۥ بِأَلۡسِنَتِكُمۡ وَتَقُولُونَ بِأَفۡوَاهِكُم مَّا لَيۡسَ لَكُم بِهِۦ عِلۡمٞ وَتَحۡسَبُونَهُۥ هَيِّنٗا وَهُوَ عِندَ ٱللَّهِ عَظِيمٞ ١٥

---

16. ನೀವು ಅದನ್ನು ಕೇಳಿದಾಗ, "ಇದರ ಬಗ್ಗೆ ಮಾತನಾಡುವುದು ನಮಗೆ ಯೋಗ್ಯವಾದುದಲ್ಲ. ಅಲ್ಲಾಹು ಪರಿಶುದ್ಧನು. ಇದೊಂದು ಮಹಾ ಸುಳ್ಳಾರೋಪವಾಗಿದೆ" ಎಂದು ಏಕೆ ಹೇಳಲಿಲ್ಲ?

وَلَوۡلَآ إِذۡ سَمِعۡتُمُوهُ قُلۡتُم مَّا يَكُونُ لَنَآ أَن نَّتَكَلَّمَ بِهَٰذَا سُبۡحَٰنَكَ هَٰذَا بُهۡتَٰنٌ عَظِيمٞ ١٦

---

17. ನೀವು ಸತ್ಯವಿಶ್ವಾಸಿಗಳಾಗಿದ್ದರೆ ಇಂತಹ ಕೆಲಸವನ್ನು ಮುಂದೆ ಎಂದಿಗೂ ಮಾಡಬಾರದೆಂದು ಅಲ್ಲಾಹು ನಿಮಗೆ ಉಪದೇಶ

يَعِظُكُمُ ٱللَّهُ أَن تَعُودُواْ لِمِثۡلِهِۦٓ أَبَدًا إِن كُنتُم مُّؤۡمِنِينَ ١٧

[1] ಇಲ್ಲಿ ಹೇಳಿರುವುದು ಪ್ರವಾದಿ ಮುಹಮ್ಮದರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಪತ್ನಿ ಆಯಿಶರ ಮೇಲೆ ವ್ಯಭಿಚಾರ ಆರೋಪ ಹೊರಿಸಿದವರ ಬಗ್ಗೆ. ಕಪಟವಿಶ್ವಾಸಿಗಳ ಮುಖಂಡ ಅಬ್ದುಲ್ಲಾ ಬಿನ್ ಉಬೈ ಈ ಅಪಪ್ರಚಾರದಲ್ಲಿ ಪ್ರಮುಖ ಪಾತ್ರ ವಹಿಸಿದ್ದನು.

ನೀಡುತ್ತಿದ್ದಾನೆ.

18. ಅಲ್ಲಾಹು ನಿಮಗೆ ವಚನಗಳನ್ನು (ನಿಯಮಗಳನ್ನು) ವಿವರಿಸುತ್ತಿ-ದ್ದಾನೆ. ಅಲ್ಲಾಹು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَيُبَيِّنُ ٱللَّهُ لَكُمُ ٱلۡأٓيَٰتِۚ وَٱللَّهُ عَلِيمٌ حَكِيمٌ ١٨

19. ಸತ್ಯವಿಶ್ವಾಸಿಗಳ ನಡುವೆ ಅಶ್ಲೀಲವು ಪ್ರಚಾರವಾಗಬೇಕೆಂದು ಬಯಸುವವರು ಯಾರೋ ಅವರಿಗೆ ಇಹಲೋಕದಲ್ಲಿ ಮತ್ತು ಪರಲೋಕದಲ್ಲಿ ಯಾತನಾಮಯ ಶಿಕ್ಷೆಯಿದೆ. ಅಲ್ಲಾಹು ಎಲ್ಲವನ್ನೂ ತಿಳಿದಿದ್ದಾನೆ. ಆದರೆ ನೀವು ತಿಳಿದಿಲ್ಲ.

إِنَّ ٱلَّذِينَ يُحِبُّونَ أَن تَشِيعَ ٱلۡفَٰحِشَةُ فِي ٱلَّذِينَ ءَامَنُواْ لَهُمۡ عَذَابٌ أَلِيمٌ فِي ٱلدُّنۡيَا وَٱلۡأٓخِرَةِۚ وَٱللَّهُ يَعۡلَمُ وَأَنتُمۡ لَا تَعۡلَمُونَ ١٩

20. ನಿಮ್ಮ ಮೇಲೆ ಅಲ್ಲಾಹನ ಔದಾರ್ಯ ಮತ್ತು ದಯೆಯಿಲ್ಲದಿರುತ್ತಿ-ದ್ದರೆ (ನಿಮಗೆ ಬಹಳ ಕಷ್ಟಗಳನ್ನು ಅನುಭವಿಸಬೇಕಾಗಿ ಬರುತ್ತಿತ್ತು). ನಿಶ್ಚಯವಾಗಿಯೂ ಅಲ್ಲಾಹು ಅನುಕಂಪ ತೋರುವವನು ಮತ್ತು ಮತ್ತು ದಯೆ ತೋರುವವನಾಗಿದ್ದಾನೆ.

وَلَوۡلَا فَضۡلُ ٱللَّهِ عَلَيۡكُمۡ وَرَحۡمَتُهُۥ وَأَنَّ ٱللَّهَ رَءُوفٞ رَّحِيمٞ ٢٠

21. ಓ ಸತ್ಯವಿಶ್ವಾಸಿಗಳೇ! ನೀವು ಶೈತಾನನ ಹೆಜ್ಜೆಗಳನ್ನು ಹಿಂಬಾಲಿಸಬೇಡಿ. ಯಾರು ಶೈತಾನನ ಹೆಜ್ಜೆಗಳನ್ನು ಹಿಂಬಾಲಿಸುತ್ತಾನೋ—ನಿಶ್ಚಯವಾಗಿಯೂ ಶೈತಾನನು (ಅವನಿಗೆ) ಅಶ್ಲೀಲತೆ ಮತ್ತು ದುಷ್ಕೃತ್ಯಗಳನ್ನು ಮಾತ್ರ ಮಾಡಲು ಆದೇಶಿಸುತ್ತಾನೆ. ನಿಮ್ಮ ಮೇಲೆ ಅಲ್ಲಾಹನ ಔದಾರ್ಯ ಮತ್ತು ದಯೆಯಿಲ್ಲದಿರುತ್ತಿದ್ದರೆ ನಿಮ್ಮಲ್ಲಿ ಯಾರೂ ಯಾವತ್ತೂ ಪರಿಶು-ದ್ಧರಾಗುತ್ತಿರಲಿಲ್ಲ. ಆದರೆ ಅಲ್ಲಾಹು ಅವನು ಬಯಸುವವರನ್ನು ಪರಿಶುದ್ಧಗೊಳಿಸುತ್ತಾನೆ. ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

يَٰٓأَيُّهَا ٱلَّذِينَ ءَامَنُواْ لَا تَتَّبِعُواْ خُطُوَٰتِ ٱلشَّيۡطَٰنِۚ وَمَن يَتَّبِعۡ خُطُوَٰتِ ٱلشَّيۡطَٰنِ فَإِنَّهُۥ يَأۡمُرُ بِٱلۡفَحۡشَآءِ وَٱلۡمُنكَرِۚ وَلَوۡلَا فَضۡلُ ٱللَّهِ عَلَيۡكُمۡ وَرَحۡمَتُهُۥ مَا زَكَىٰ مِنكُم مِّنۡ أَحَدٍ أَبَدٗا وَلَٰكِنَّ ٱللَّهَ يُزَكِّي مَن يَشَآءُۗ وَٱللَّهُ سَمِيعٌ عَلِيمٞ ٢١

22. ನಿಮ್ಮಲ್ಲಿರುವ ಶ್ರೇಷ್ಠರು ಮತ್ತು ಸಂಪನ್ನರು ತಮ್ಮ ಸಂಬಂಧಿಕರಿಗೆ, ಬಡವರಿಗೆ ಮತ್ತು ಅಲ್ಲಾಹನ ಮಾರ್ಗದಲ್ಲಿ ವಲಸೆ (ಹಿಜ್ರ) ಮಾಡಿದವರಿಗೆ ಏನೂ ಕೊಡುವುದಿಲ್ಲವೆಂದು ಪ್ರತಿಜ್ಞೆ ಮಾಡದಿರಲಿ.[1] ಅವರು ಅವರನ್ನು ಮನ್ನಿಸಲಿ ಮತ್ತು (ಅವರ ತಪ್ಪುಗಳನ್ನು) ನಿರ್ಲಕ್ಷಿಸಲಿ. ಅಲ್ಲಾಹು ನಿಮ್ಮನ್ನು ಕ್ಷಮಿಸಬೇಕೆಂದು ನೀವು ಆಸೆ ಪಡುವುದಿಲ್ಲವೇ? ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

وَلَا يَأۡتَلِ أُوْلُواْ ٱلۡفَضۡلِ مِنكُمۡ وَٱلسَّعَةِ أَن يُؤۡتُوٓاْ أُوْلِي ٱلۡقُرۡبَىٰ وَٱلۡمَسَٰكِينَ وَٱلۡمُهَٰجِرِينَ فِي سَبِيلِ ٱللَّهِۖ وَلۡيَعۡفُواْ وَلۡيَصۡفَحُوٓاْۗ أَلَا تُحِبُّونَ أَن يَغۡفِرَ ٱللَّهُ لَكُمۡۚ وَٱللَّهُ غَفُورٞ رَّحِيمٌ ٢٢

23. ಪರಿಶುದ್ಧರಾದ, (ವ್ಯಭಿಚಾರದ ಬಗ್ಗೆ) ಯೋಚಿಸಿಯೂ ಇರದ ಸತ್ಯವಿಶ್ವಾಸಿ ಮಹಿಳೆಯರ ಮೇಲೆ ವ್ಯಭಿಚಾರದ ಆರೋಪ

إِنَّ ٱلَّذِينَ يَرۡمُونَ ٱلۡمُحۡصَنَٰتِ ٱلۡغَٰفِلَٰتِ ٱلۡمُؤۡمِنَٰتِ لُعِنُواْ فِي ٱلدُّنۡيَا وَٱلۡأٓخِرَةِ وَلَهُمۡ

[1] ಮಿಸ್ತಹ್ ಎಂಬ ಹೆಸರಿನ ಸಹಾಬಿ ಅಚಾನಕ್ಕಾಗಿ ಈ ಅಪಪ್ರಚಾರದಲ್ಲಿ ಭಾಗಿಯಾಗಿದ್ದರು. ಇವರಿಗೆ ಆಯಿಶರ ತಂದೆ ಅಬೂಬಕರ್ (ಅವರ ಬಗ್ಗೆ ಅಲ್ಲಾಹು ಸಂಪ್ರೀತನಾಗಲಿ) ಖರ್ಚಿಗೆ ನೀಡುತ್ತಿದ್ದರು. ಈ ವಿಷಯ ತಿಳಿದಾಗ ಇನ್ನು ಮುಂದೆ ಅವರಿಗೆ ಖರ್ಚಿಗೆ ಏನೂ ಕೊಡುವುದಿಲ್ಲ-ವೆಂದು ಅಬೂಬಕರ್ (ಅವರ ಬಗ್ಗೆ ಅಲ್ಲಾಹು ಸಂಪ್ರೀತನಾಗಲಿ) ಪ್ರತಿಜ್ಞೆ ಮಾಡಿದರು.

| | | |
|---|---|---|
| | ಹೊರಿಸುವವರು ಯಾರೋ—ಅವರನ್ನು ಇಹಲೋಕದಲ್ಲೂ ಪರಲೋಕದಲ್ಲೂ ಶಪಿಸಲಾಗಿದೆ. ಅವರಿಗೆ ಘೋರ ಶಿಕ್ಷೆಯಿದೆ. | عَذَابٌ عَظِيمٌ ﴿٢٣﴾ |
| 24. | ಅವರು ಮಾಡುತ್ತಿರುವ ಕೃತ್ಯಗಳ ಬಗ್ಗೆ ಅವರ ನಾಲಗೆಗಳು, ಕೈಗಳು ಮತ್ತು ಕಾಲುಗಳು ಅವರ ವಿರುದ್ಧ ಸಾಕ್ಷಿ ನುಡಿಯುವ ದಿನ. | يَوۡمَ تَشۡهَدُ عَلَيۡهِمۡ أَلۡسِنَتُهُمۡ وَأَيۡدِيهِمۡ وَأَرۡجُلُهُم بِمَا كَانُواْ يَعۡمَلُونَ ﴿٢٤﴾ |
| 25. | ಅಂದು ಅಲ್ಲಾಹು ಅವರಿಗೆ ಅವರ ನಿಜವಾದ ಪ್ರತಿಫಲವನ್ನು ಪೂರ್ಣವಾಗಿ ನೀಡುವನು. ಅಲ್ಲಾಹನೇ ಪರಮ ಸತ್ಯವೆಂದು ಅವರು ಖಂಡಿತ ತಿಳಿಯುವರು. | يَوۡمَئِذٖ يُوَفِّيهِمُ ٱللَّهُ دِينَهُمُ ٱلۡحَقَّ وَيَعۡلَمُونَ أَنَّ ٱللَّهَ هُوَ ٱلۡحَقُّ ٱلۡمُبِينُ ﴿٢٥﴾ |
| 26. | ನೀಚ ಮಹಿಳೆಯರು ನೀಚ ಪುರುಷರಿಗೆ ಮತ್ತು ನೀಚ ಪುರುಷರು ನೀಚ ಮಹಿಳೆಯರಿಗೆ. ಪರಿಶುದ್ಧ ಮಹಿಳೆಯರು ಪರಿಶುದ್ಧ ಪುರುಷರಿಗೆ ಮತ್ತು ಪರಿಶುದ್ಧ ಪುರುಷರು ಪರಿಶುದ್ಧ ಮಹಿಳೆಯರಿಗೆ. ಅವರು ಮಾಡುತ್ತಿರುವ ಎಲ್ಲಾ (ನೀಚ) ಆರೋಪಗಳಿಂದ ಈ ಪರಿಶುದ್ಧ ಜನರು ಮುಕ್ತರಾಗಿದ್ದಾರೆ. ಇವರಿಗೆ ಕ್ಷಮೆ ಮತ್ತು ಗೌರವಾನ್ವಿತ ಉಪಜೀವನವಿದೆ. | ٱلۡخَبِيثَٰتُ لِلۡخَبِيثِينَ وَٱلۡخَبِيثُونَ لِلۡخَبِيثَٰتِۖ وَٱلطَّيِّبَٰتُ لِلطَّيِّبِينَ وَٱلطَّيِّبُونَ لِلطَّيِّبَٰتِۚ أُوْلَٰٓئِكَ مُبَرَّءُونَ مِمَّا يَقُولُونَۖ لَهُم مَّغۡفِرَةٞ وَرِزۡقٞ كَرِيمٞ ﴿٢٦﴾ |
| 27. | ಓ ಸತ್ಯವಿಶ್ವಾಸಿಗಳೇ! ನಿಮ್ಮ ಮನೆಗಳನ್ನು ಬಿಟ್ಟು ಬೇರೆ ಮನೆಗಳನ್ನು, ಆ ಮನೆಯವರಿಂದ ಅನುಮತಿ ಪಡೆದು ಅವರಿಗೆ ಸಲಾಮ್ ಹೇಳುವ ತನಕ ಪ್ರವೇಶಿಸಬೇಡಿ. ಅದು ನಿಮಗೆ ಉತ್ತಮವಾಗಿದೆ. ನೀವು ಉಪದೇಶ ಪಡೆಯುವುದಕ್ಕಾಗಿ. | يَٰٓأَيُّهَا ٱلَّذِينَ ءَامَنُواْ لَا تَدۡخُلُواْ بُيُوتًا غَيۡرَ بُيُوتِكُمۡ حَتَّىٰ تَسۡتَأۡنِسُواْ وَتُسَلِّمُواْ عَلَىٰٓ أَهۡلِهَاۚ ذَٰلِكُمۡ خَيۡرٞ لَّكُمۡ لَعَلَّكُمۡ تَذَكَّرُونَ ﴿٢٧﴾ |
| 28. | ಅಲ್ಲಿ ಯಾರೂ ಇಲ್ಲದಿದ್ದರೂ ಸಹ ನಿಮಗೆ ಅನುಮತಿ ಸಿಗುವ ತನಕ ಆ ಮನೆಗಳನ್ನು ಪ್ರವೇಶಿಸಬೇಡಿ. ನಿಮ್ಮೊಡನೆ ಹಿಂದಿರುಗಿ ಹೋಗಲು ಹೇಳಲಾದರೆ ಹಿಂದಿರುಗಿರಿ. ಅದು ನಿಮಗೆ ಅತ್ಯಂತ ಪರಿಶುದ್ಧವಾಗಿದೆ. ಅಲ್ಲಾಹು ನೀವು ಮಾಡುತ್ತಿರುವುದನ್ನು ತಿಳಿಯುತ್ತಾನೆ. | فَإِن لَّمۡ تَجِدُواْ فِيهَآ أَحَدٗا فَلَا تَدۡخُلُوهَا حَتَّىٰ يُؤۡذَنَ لَكُمۡۖ وَإِن قِيلَ لَكُمُ ٱرۡجِعُواْ فَٱرۡجِعُواْۖ هُوَ أَزۡكَىٰ لَكُمۡۚ وَٱللَّهُ بِمَا تَعۡمَلُونَ عَلِيمٞ ﴿٢٨﴾ |
| 29. | ಜನವಾಸವಿಲ್ಲದ ಮತ್ತು ನಿಮ್ಮ ಯಾವುದಾದರೂ ಬಳಕೆಗೆ ಇರುವಂತಹ ಮನೆಗಳನ್ನು (ಅನುಮತಿ ವಿನಾ) ಪ್ರವೇಶಿಸುವುದ-ರಲ್ಲಿ ತಪ್ಪಿಲ್ಲ. ನೀವು ಬಹಿರಂಗಪಡಿಸುವುದನ್ನು ಮತ್ತು ರಹಸ್ಯವಾ-ಗಿಡುವುದನ್ನು ಅಲ್ಲಾಹು ತಿಳಿಯುತ್ತಾನೆ. | لَّيۡسَ عَلَيۡكُمۡ جُنَاحٌ أَن تَدۡخُلُواْ بُيُوتًا غَيۡرَ مَسۡكُونَةٖ فِيهَا مَتَٰعٞ لَّكُمۡۚ وَٱللَّهُ يَعۡلَمُ مَا تُبۡدُونَ وَمَا تَكۡتُمُونَ ﴿٢٩﴾ |
| 30. | (ಪ್ರವಾದಿಯವರೇ) ಸತ್ಯವಿಶ್ವಾಸಿಗಳೊಂದಿಗೆ ತಮ್ಮ ದೃಷ್ಟಿಗಳನ್ನು ತಗ್ಗಿಸಲು ಮತ್ತು ತಮ್ಮ ಗುಹ್ಯಭಾಗಗಳನ್ನು ರಕ್ಷಿಸಲು ಹೇಳಿರಿ. ಅದು ಅವರಿಗೆ ಅತ್ಯಂತ ಪರಿಶುದ್ಧವಾಗಿದೆ. ನಿಶ್ಚಯವಾಗಿಯೂ ಅವರು ಮಾಡುವುದೆಲ್ಲವನ್ನೂ ಅಲ್ಲಾಹು ಸೂಕ್ಷ್ಮವಾಗಿ ತಿಳಿಯುತ್ತಾನೆ. | قُل لِّلۡمُؤۡمِنِينَ يَغُضُّواْ مِنۡ أَبۡصَٰرِهِمۡ وَيَحۡفَظُواْ فُرُوجَهُمۡۚ ذَٰلِكَ أَزۡكَىٰ لَهُمۡۚ إِنَّ ٱللَّهَ خَبِيرُۢ بِمَا يَصۡنَعُونَ ﴿٣٠﴾ |

31. ಸತ್ಯವಿಶ್ವಾಸಿ ಮಹಿಳೆಯರೊಂದಿಗೆ ತಮ್ಮ ದೃಷ್ಟಿಗಳನ್ನು ತಗ್ಗಿಸಲು ಮತ್ತು ತಮ್ಮ ಗುಹ್ಯಭಾಗಗಳನ್ನು ರಕ್ಷಿಸಲು ಹೇಳಿರಿ. ಅವರು ತಮ್ಮ ಸೌಂದರ್ಯದಿಂದ ಏನನ್ನೂ ಪ್ರದರ್ಶಿಸದಿರಲಿ—(ಅನಿವಾರ್ಯವಾಗಿ) ಪ್ರಕಟವಾಗುವ ಭಾಗಗಳ ಹೊರತು. ಅವರು ತಮ್ಮ ಎದೆಗಳ ಮೇಲೆ ಶಿರವಸ್ತ್ರಗಳನ್ನು ಹಾಕಿಕೊಳ್ಳಲಿ. ಅವರು ತಮ್ಮ ಸೌಂದರ್ಯವನ್ನು ಅವರ ಗಂಡಂದಿರು, ತಂದೆಯಂದಿರು, ಗಂಡನ ತಂದೆಯಂದಿರು, ಪುತ್ರರು, ಗಂಡನ ಪುತ್ರರು, ಸಹೋದರರು, ಸಹೋದರರ ಪುತ್ರರು, ಸಹೋದರಿಯರ ಪುತ್ರರು, ಮುಸ್ಲಿಮ್ ಮಹಿಳೆಯರು, ಅವರ ಅಧೀನದಲ್ಲಿರುವ ಗುಲಾಮರು, ಲೈಂಗಿಕಾಸಕ್ತಿಯಿಲ್ಲದ ಪುರುಷ ಸೇವಕರು, ಮಹಿಳೆಯರ ಖಾಸಗಿ ಭಾಗಗಳ ಬಗ್ಗೆ ಇನ್ನೂ ತಿಳಿದಿರದ ಮಕ್ಕಳು ಮುಂತಾದವರ ಹೊರತು ಬೇರೆ ಯಾರಿಗೂ ತೋರಿಸದಿರಲಿ. ಮರೆಯಾಗಿರುವ ತಮ್ಮ ಸೌಂದರ್ಯವು ಇತರರಿಗೆ ತಿಳಿಯುವಂತೆ ಮಾಡಲು ಅವರು ಕಾಲನ್ನು ನೆಲಕ್ಕೆ ಬಡಿದು ನಡೆಯದಿರಲಿ. ಓ ಸತ್ಯವಿಶ್ವಾಸಿಗಳೇ! ನೀವೆಲ್ಲರೂ ಅಲ್ಲಾಹನ ಬಳಿಗೆ ಪಶ್ಚಾತ್ತಾಪಪಟ್ಟು ಮರಳಿರಿ. ನೀವು ಯಶಸ್ವಿಯಾಗುವುದಕ್ಕಾಗಿ.

وَقُل لِّلۡمُؤۡمِنَٰتِ يَغۡضُضۡنَ مِنۡ أَبۡصَٰرِهِنَّ
وَيَحۡفَظۡنَ فُرُوجَهُنَّ وَلَا يُبۡدِينَ زِينَتَهُنَّ إِلَّا مَا
ظَهَرَ مِنۡهَاۖ وَلۡيَضۡرِبۡنَ بِخُمُرِهِنَّ عَلَىٰ جُيُوبِهِنَّۖ
وَلَا يُبۡدِينَ زِينَتَهُنَّ إِلَّا لِبُعُولَتِهِنَّ أَوۡ ءَابَآئِهِنَّ
أَوۡ ءَابَآءِ بُعُولَتِهِنَّ أَوۡ أَبۡنَآئِهِنَّ أَوۡ أَبۡنَآءِ
بُعُولَتِهِنَّ أَوۡ إِخۡوَٰنِهِنَّ أَوۡ بَنِيٓ إِخۡوَٰنِهِنَّ أَوۡ بَنِيٓ
أَخَوَٰتِهِنَّ أَوۡ نِسَآئِهِنَّ أَوۡ مَا مَلَكَتۡ أَيۡمَٰنُهُنَّ
أَوِ ٱلتَّٰبِعِينَ غَيۡرِ أُوْلِي ٱلۡإِرۡبَةِ مِنَ ٱلرِّجَالِ أَوِ
ٱلطِّفۡلِ ٱلَّذِينَ لَمۡ يَظۡهَرُواْ عَلَىٰ عَوۡرَٰتِ ٱلنِّسَآءِۖ
وَلَا يَضۡرِبۡنَ بِأَرۡجُلِهِنَّ لِيُعۡلَمَ مَا يُخۡفِينَ مِن
زِينَتِهِنَّۚ وَتُوبُوٓاْ إِلَى ٱللَّهِ جَمِيعًا أَيُّهَ ٱلۡمُؤۡمِنُونَ
لَعَلَّكُمۡ تُفۡلِحُونَ ٣١

32. ನಿಮ್ಮಲ್ಲಿ ಅವಿವಾಹಿತರಾಗಿರುವ ಪುರುಷರು ಮತ್ತು ಮಹಿಳೆಯರಿಗೆ ವಿವಾಹ ಮಾಡಿಸಿರಿ. ನಿಮ್ಮ ನೀತಿವಂತ ಗುಲಾಮರು ಮತ್ತು ಗುಲಾಮ ಸ್ತ್ರೀಯರಿಗೂ ವಿವಾಹ ಮಾಡಿಸಿರಿ. ಅವರು ಬಡವರಾಗಿದ್ದರೆ ಅಲ್ಲಾಹು ತನ್ನ ಔದಾರ್ಯದಿಂದ ಅವರಿಗೆ ಶ್ರೀಮಂತಿಕೆಯನ್ನು ನೀಡುವನು. ಅಲ್ಲಾಹು ವಿಶಾಲನು ಮತ್ತು ಸರ್ವಜ್ಞನಾಗಿದ್ದಾನೆ.

وَأَنكِحُواْ ٱلۡأَيَٰمَىٰ مِنكُمۡ وَٱلصَّٰلِحِينَ مِنۡ
عِبَادِكُمۡ وَإِمَآئِكُمۡۚ إِن يَكُونُواْ فُقَرَآءَ
يُغۡنِهِمُ ٱللَّهُ مِن فَضۡلِهِۦۗ وَٱللَّهُ وَٰسِعٌ عَلِيمٞ ٣٢

33. ವಿವಾಹವಾಗುವ ಸಾಮರ್ಥ್ಯವಿಲ್ಲದವರು—ಅಲ್ಲಾಹು ಅವರಿಗೆ ತನ್ನ ಔದಾರ್ಯದಿಂದ ಶ್ರೀಮಂತಿಕೆಯನ್ನು ಒದಗಿಸುವ ತನಕ ತಮ್ಮ ಪರಿಶುದ್ಧತೆಯನ್ನು ಕಾಪಾಡಿಕೊಳ್ಳಲಿ. ನಿಮ್ಮ ಅಧೀನದಲ್ಲಿರುವ ಗುಲಾಮರಲ್ಲಿ ಯಾರಾದರೂ ನಿಮಗೆ ಏನಾದರೂ ನೀಡಿ ಸ್ವತಂತ್ರರಾಗಲು ಬಯಸಿದರೆ, ಅವರಲ್ಲಿ ಒಳಿತಿದೆಯೆಂದು ನಿಮಗೆ ತಿಳಿದು ಬಂದರೆ ಅವರನ್ನು ಸ್ವತಂತ್ರಗೊಳಿಸಿರಿ.[1] ಅಲ್ಲಾಹು ನಿಮಗೆ ನೀಡಿದ ಸಂಪತ್ತಿನಿಂದ ಅವರಿಗೂ

وَلۡيَسۡتَعۡفِفِ ٱلَّذِينَ لَا يَجِدُونَ نِكَاحًا حَتَّىٰ
يُغۡنِيَهُمُ ٱللَّهُ مِن فَضۡلِهِۦۗ وَٱلَّذِينَ يَبۡتَغُونَ
ٱلۡكِتَٰبَ مِمَّا مَلَكَتۡ أَيۡمَٰنُكُمۡ فَكَاتِبُوهُمۡ
إِنۡ عَلِمۡتُمۡ فِيهِمۡ خَيۡرٗاۖ وَءَاتُوهُم مِّن مَّالِ ٱللَّهِ
ٱلَّذِيٓ ءَاتَىٰكُمۡۚ وَلَا تُكۡرِهُواْ فَتَيَٰتِكُمۡ عَلَى
ٱلۡبِغَآءِ إِنۡ أَرَدۡنَ تَحَصُّنٗا لِّتَبۡتَغُواْ عَرَضَ ٱلۡحَيَوٰةِ

[1] ನಾನು ಇಂತಿಷ್ಟು ಮೊತ್ತ ಹಣವನ್ನು ಸಂಗ್ರಹಿಸಿಕೊಟ್ಟರೆ ನೀವು ನನ್ನನ್ನು ಸ್ವತಂತ್ರಗೊಳಿಸಬೇಕೆಂದು ಗುಲಾಮರು ತಮ್ಮ ಯಜಮಾನರೊಡನೆ ವಿಮೋಚನಾ ಒಪ್ಪಂದ ಮಾಡುತ್ತಿದ್ದರು. ಅವರಲ್ಲಿ ಒಳಿತಿದೆಯೆಂದು ನಿಮಗೆ ತಿಳಿದು ಬಂದರೆ ಎಂಬ ವಚನದ ಅರ್ಥವೇನೆಂದರೆ, ಆ ಗುಲಾಮರಲ್ಲಿ ಸತ್ಯವಂತಿಕೆ ಮತ್ತು ಪ್ರಾಮಾಣಿಕತೆಯಿದೆಯೆಂದು ನಿಮಗೆ ತಿಳಿದು ಬಂದರೆ, ಅಥವಾ ಅವರು ಯಾವುದಾದರೂ ವೃತ್ತಿಯಲ್ಲಿ ತರಬೇತಿ ಪಡೆದಿದ್ದು ಆ ವೃತ್ತಿ ಮಾಡಿ ನಿಮ್ಮ ಹಣವನ್ನು ಪಾವತಿಸುವವರೆಂಬ ಭರವಸೆ ನಿಮಗಿದ್ದರೆ ಅವರನ್ನು ಸ್ವತಂತ್ರಗೊಳಿಸಿರಿ ಎಂದರ್ಥ.

ٱلدُّنۡيَاۚ وَمَن يُكۡرِههُّنَّ فَإِنَّ ٱللَّهَ مِنۢ بَعۡدِ إِكۡرَٰهِهِنَّ غَفُورٞ رَّحِيمٞ ٣٣

ಸ್ವಲ್ಪ ನೀಡಿರಿ. ನಿಮ್ಮ ಗುಲಾಮ ಸ್ತ್ರೀಯರು ಪರಿಶುದ್ಧರಾಗಿ ಬದುಕಲು ಬಯಸಿದರೆ, ಐಹಿಕ ಲಾಭಗಳನ್ನು ದೃಷ್ಟಿಯಲ್ಲಿಟ್ಟು ಅವರನ್ನು ಬಲವಂತವಾಗಿ ವ್ಯಭಿಚಾರಕ್ಕೆ ತಳ್ಳಬೇಡಿ.[1] ಯಾರಾದರೂ ಅವರನ್ನು ಬಲವಂತಪಡಿಸಿದರೆ, ಆ ಗುಲಾಮ ಸ್ತ್ರೀಯರು ಬಲವಂತದಿಂದ ತಪ್ಪೆಸಗಿದ ಬಳಿಕವೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

---

وَلَقَدۡ أَنزَلۡنَآ إِلَيۡكُمۡ ءَايَٰتٖ مُّبَيِّنَٰتٖ وَمَثَلٗا مِّنَ ٱلَّذِينَ خَلَوۡاْ مِن قَبۡلِكُمۡ وَمَوۡعِظَةٗ لِّلۡمُتَّقِينَ ٣٤

34. ನಿಶ್ಚಯವಾಗಿಯೂ ನಾವು ನಿಮಗೆ ಸ್ಪಷ್ಟವಾದ ವಚನಗಳನ್ನು ಅವತೀರ್ಣಗೊಳಿಸಿದ್ದೇವೆ. ನಿಮಗಿಂತ ಮೊದಲು ಬದುಕಿದ್ದ ಜನರ ಸಮಾಚಾರಗಳನ್ನು ಮತ್ತು ದೇವಭಯವುಳ್ಳವರಿಗೆ ಉಪದೇಶವನ್ನು (ಅವತೀರ್ಣಗೊಳಿಸಿದ್ದೇವೆ).

---

ٱللَّهُ نُورُ ٱلسَّمَٰوَٰتِ وَٱلۡأَرۡضِۚ مَثَلُ نُورِهِۦ كَمِشۡكَوٰةٖ فِيهَا مِصۡبَاحٌۖ ٱلۡمِصۡبَاحُ فِي زُجَاجَةٍۖ ٱلزُّجَاجَةُ كَأَنَّهَا كَوۡكَبٞ دُرِّيّٞ يُوقَدُ مِن شَجَرَةٖ مُّبَٰرَكَةٖ زَيۡتُونَةٖ لَّا شَرۡقِيَّةٖ وَلَا غَرۡبِيَّةٖ يَكَادُ زَيۡتُهَا يُضِيٓءُ وَلَوۡ لَمۡ تَمۡسَسۡهُ نَارٞۚ نُّورٌ عَلَىٰ نُورٖۚ يَهۡدِي ٱللَّهُ لِنُورِهِۦ مَن يَشَآءُۚ وَيَضۡرِبُ ٱللَّهُ ٱلۡأَمۡثَٰلَ لِلنَّاسِۗ وَٱللَّهُ بِكُلِّ شَيۡءٍ عَلِيمٞ ٣٥

35. ಅಲ್ಲಾಹು ಭೂಮ್ಯಾಕಾಶಗಳ ಬೆಳಕಾಗಿದ್ದಾನೆ. ಅವನ ಬೆಳಕಿನ ಉದಾಹರಣೆಯು (ಗೋಡೆಯಲ್ಲಿ ದೀಪವನ್ನಿಡಲು ನಿರ್ಮಿಸಲಾದ) ಒಂದು ಮಾಡದಂತೆ. ಅದರಲ್ಲಿ ಒಂದು ದೀಪವಿದೆ. ದೀಪವು ಗಾಜಿನ ಆವರಣದ ಒಳಗಿದೆ. ಆ ಗಾಜು ಬೆಳ್ಳಗೆ ಹೊಳೆಯುವ ಒಂದು ನಕ್ಷತ್ರವೋ ಎಂಬಂತಿದೆ. ಆ ದೀಪವು ಸಮೃದ್ಧವಾದ ಓಲಿವ್ ಮರದ ಎಣ್ಣೆಯಿಂದ ಉರಿಯುತ್ತಿದೆ. ಆ ಮರವು ಪೂರ್ವಭಾಗದ್ದೋ ಪಶ್ಚಿಮ ಭಾಗದ್ದೋ ಅಲ್ಲ. ಬೆಂಕಿ ಆ ಎಣ್ಣೆಯನ್ನು ಸ್ಪರ್ಶಿಸದಿದ್ದರೂ ಸಹ ಅದು (ಎಣ್ಣೆ) ಹೆಚ್ಚು-ಕಮ್ಮಿ ಹೊಳೆಯುತ್ತಲೇ ಇದೆ. ಬೆಳಕಿನ ಮೇಲೆ ಬೆಳಕು. ಅಲ್ಲಾಹು ಅವನು ಬಯಸುವವರಿಗೆ ತನ್ನ ಬೆಳಕಿನ ಕಡೆಗೆ ದಾರಿ ತೋರಿಸುತ್ತಾನೆ. ಜನರು (ಅರ್ಥಮಾಡಿಕೊಳ್ಳುವುದಕ್ಕಾಗಿ) ಅಲ್ಲಾಹು ಉದಾಹರಣೆಗಳನ್ನು ನೀಡುತ್ತಿದ್ದಾನೆ. ಅಲ್ಲಾಹು ಎಲ್ಲಾ ವಿಷಯಗಳ ಬಗ್ಗೆಯೂ ತಿಳಿದವನಾಗಿದ್ದಾನೆ.

---

فِي بُيُوتٍ أَذِنَ ٱللَّهُ أَن تُرۡفَعَ وَيُذۡكَرَ فِيهَا ٱسۡمُهُۥ يُسَبِّحُ لَهُۥ فِيهَا بِٱلۡغُدُوِّ وَٱلۡأٓصَالِ ٣٦

36. ಅಲ್ಲಾಹು ಎತ್ತರಿಸಲು ಮತ್ತು ತನ್ನ ಹೆಸರನ್ನು ಸ್ಮರಿಸಲು ಆದೇಶಿಸಿದ ಮಸೀದಿಗಳಲ್ಲಿ (ಆ ಬೆಳಕುಗಳಿವೆ). ಅಲ್ಲಿ ಮುಂಜಾನೆ ಮತ್ತು ಸಂಜೆ ಅವನ ಮಹತ್ವವನ್ನು ಕೊಂಡಾಡುತ್ತಾರೆ.

---

رِجَالٞ لَّا تُلۡهِيهِمۡ تِجَٰرَةٞ وَلَا بَيۡعٌ عَن ذِكۡرِ ٱللَّهِ وَإِقَامِ ٱلصَّلَوٰةِ وَإِيتَآءِ ٱلزَّكَوٰةِ يَخَافُونَ يَوۡمٗا تَتَقَلَّبُ فِيهِ ٱلۡقُلُوبُ وَٱلۡأَبۡصَٰرُ ٣٧

37. ಪುರುಷರು—ಅವರನ್ನು ವ್ಯಾಪಾರ ಮತ್ತು ಕ್ರಯ-ವಿಕ್ರಯಗಳು ಅಲ್ಲಾಹನನ್ನು ಸ್ಮರಿಸುವುದು, ನಮಾಝ್ ಸಂಸ್ಥಾಪಿಸುವುದು, ಝಕಾತ್ ನೀಡುವುದು ಮುಂತಾದವುಗಳ ಕಡೆಗೆ ಗಮನ

---

[1] ಇಸ್ಲಾಮೀ ಪೂರ್ವ ಕಾಲದಲ್ಲಿ (ಅಜ್ಞಾನಕಾಲದಲ್ಲಿ) ಯಜಮಾನರು ತಮ್ಮ ಗುಲಾಮ ಸ್ತ್ರೀಯರನ್ನು ವೇಶ್ಯಾವಾಟಿಕೆಗೆ ತಳ್ಳಿ ಆದಾಯ ಗಳಿಸುತ್ತಿದ್ದರು. ಮುಸಲ್ಮಾನರು ತಮ್ಮ ಅಧೀನದಲ್ಲಿರುವ ಗುಲಾಮಸ್ತ್ರೀಯರಿಂದ ಇಂತಹ ಕೆಲಸಗಳನ್ನು ಮಾಡಿಸಬಾರದೆಂದು ಇಲ್ಲಿ ಆದೇಶ ನೀಡಲಾಗಿದೆ.

ಹರಿಸದಂತೆ ಮಾಡುವುದಿಲ್ಲ. ಹೃದಯಗಳು ಮತ್ತು ಕಣ್ಣುಗಳು ಹೊರಳಾಡುವ ಒಂದು ದಿನವನ್ನು ಅವರು ಭಯಪಡುತ್ತಾರೆ.

---

38. ಅಲ್ಲಾಹು ಅವರ ಕರ್ಮಗಳಿಗೆ ಅತ್ಯುತ್ತಮ ಪ್ರತಿಫಲವನ್ನು ನೀಡಲು ಮತ್ತು ತನ್ನ ಔದಾರ್ಯದಿಂದ ಅವರಿಗೆ ಹೆಚ್ಚಿಗೆಯನ್ನೂ ನೀಡಲು. ಅಲ್ಲಾಹು ಅವನು ಬಯಸುವವರಿಗೆ ಲೆಕ್ಕವಿಲ್ಲದೆ ನೀಡುತ್ತಾನೆ.

لِيَجۡزِيَهُمُ ٱللَّهُ أَحۡسَنَ مَا عَمِلُواْ وَيَزِيدَهُم مِّن فَضۡلِهِۦۗ وَٱللَّهُ يَرۡزُقُ مَن يَشَآءُ بِغَيۡرِ حِسَابٖ ٣٨

---

39. ಸತ್ಯನಿಷೇಧಿಗಳ ಕರ್ಮಗಳು ಮರುಭೂಮಿಯ ಮರೀಚಿಕೆಯಂತೆ. ದಾಹದಿಂದ ಬಳಲುವವನು ಅದನ್ನು ನೀರೆಂದು ಭಾವಿಸುತ್ತಾನೆ. ಎಲ್ಲಿಯವರೆಗೆಂದರೆ, ಅವನು ಅದರ ಬಳಿಗೆ ಬಂದಾಗ ಅಲ್ಲಿ ಅವನಿಗೆ ಏನೂ ಕಾಣಿಸುವುದಿಲ್ಲ. ಆದರೆ ಅವನು ತನ್ನ ಬಳಿ ಅಲ್ಲಾಹನನ್ನು ಕಾಣುತ್ತಾನೆ ಮತ್ತು ಅಲ್ಲಾಹು ಅವನ ಲೆಕ್ಕವನ್ನು ಪೂರ್ಣವಾಗಿ ಪಾವತಿಸುತ್ತಾನೆ. ಅಲ್ಲಾಹು ಅತಿವೇಗವಾಗಿ ವಿಚಾರಣೆ ಮಾಡುವವನಾಗಿದ್ದಾನೆ.

وَٱلَّذِينَ كَفَرُوٓاْ أَعۡمَٰلُهُمۡ كَسَرَابِۭ بِقِيعَةٖ يَحۡسَبُهُ ٱلظَّمۡـَٔانُ مَآءً حَتَّىٰٓ إِذَا جَآءَهُۥ لَمۡ يَجِدۡهُ شَيۡـٔٗا وَوَجَدَ ٱللَّهَ عِندَهُۥ فَوَفَّىٰهُ حِسَابَهُۥۗ وَٱللَّهُ سَرِيعُ ٱلۡحِسَابِ ٣٩

---

40. ಅಥವಾ ಅವರ ಕರ್ಮಗಳ ಉದಾಹರಣೆಯು ಆಳ ಸಮುದ್ರದ ತಳದಲ್ಲಿರುವ ಕತ್ತಲೆಯಂತೆ. ಅದನ್ನು ಮೇಲ್ಭಾಗದಲ್ಲಿ ಅಲೆಗಳು ಮುಚ್ಚಿಕೊಂಡಿವೆ. ಅದರ ಮೇಲೆಯೂ ಅಲೆಗಳಿವೆ. ಅದರ ಮೇಲೆ ಕಾರ್ಮೋಡಗಳಿವೆ. ಒಂದರ ಮೇಲೆ ಒಂದರಂತೆ ಅನೇಕ ಕತ್ತಲೆಗಳು. ಅವನು ತನ್ನ ಕೈಯನ್ನು ಹೊರ ಚಾಚಿದರೆ ಹೆಚ್ಚು-ಕಮ್ಮಿ ಅದನ್ನು ನೋಡಲು ಅವನಿಗೆ ಸಾಧ್ಯವಾಗುವುದೇ ಇಲ್ಲ. ಅಲ್ಲಾಹು ಯಾರಿಗೆ ಬೆಳಕನ್ನು ನೀಡಲಿಲ್ಲವೋ ಅವನಿಗೆ ಯಾವುದೇ ಬೆಳಕಿಲ್ಲ.

أَوۡ كَظُلُمَٰتٖ فِي بَحۡرٖ لُّجِّيّٖ يَغۡشَىٰهُ مَوۡجٞ مِّن فَوۡقِهِۦ مَوۡجٞ مِّن فَوۡقِهِۦ سَحَابٞۚ ظُلُمَٰتُۢ بَعۡضُهَا فَوۡقَ بَعۡضٍ إِذَآ أَخۡرَجَ يَدَهُۥ لَمۡ يَكَدۡ يَرَىٰهَاۗ وَمَن لَّمۡ يَجۡعَلِ ٱللَّهُ لَهُۥ نُورٗا فَمَا لَهُۥ مِن نُّورٍ ٤٠

---

41. ಭೂಮ್ಯಾಕಾಶಗಳಲ್ಲಿರುವ ಎಲ್ಲಾ ಜೀವಿಗಳು ಮತ್ತು ರೆಕ್ಕೆಯನ್ನು ಹರಡಿಕೊಂಡು ಹಾರಾಡುವ ಎಲ್ಲಾ ಹಕ್ಕಿಗಳು ಅಲ್ಲಾಹನ ಕೀರ್ತನೆ ಮಾಡುವುದನ್ನು ನೀವು ನೋಡಿಲ್ಲವೇ? ಪ್ರತಿಯೊಬ್ಬರೂ ಅವರ ಪ್ರಾರ್ಥನೆ ಮತ್ತು ಕೀರ್ತನೆಯನ್ನು ತಿಳಿದಿದ್ದಾರೆ. ಅವರು ಮಾಡುತ್ತಿರುವ ಕರ್ಮಗಳ ಬಗ್ಗೆ ಅಲ್ಲಾಹನಿಗೆ ಬಹಳ ಚೆನ್ನಾಗಿ ತಿಳಿದಿದೆ.

أَلَمۡ تَرَ أَنَّ ٱللَّهَ يُسَبِّحُ لَهُۥ مَن فِي ٱلسَّمَٰوَٰتِ وَٱلۡأَرۡضِ وَٱلطَّيۡرُ صَٰٓفَّٰتٖۖ كُلّٞ قَدۡ عَلِمَ صَلَاتَهُۥ وَتَسۡبِيحَهُۥۗ وَٱللَّهُ عَلِيمُۢ بِمَا يَفۡعَلُونَ ٤١

---

42. ಭೂಮ್ಯಾಕಾಶಗಳ ಸಾರ್ವಭೌಮತ್ವವು ಅಲ್ಲಾಹನಿಗೆ ಸೇರಿದ್ದು. ಎಲ್ಲವೂ ಅವನ ಕಡೆಗೇ ಮರಳುತ್ತವೆ.

وَلِلَّهِ مُلۡكُ ٱلسَّمَٰوَٰتِ وَٱلۡأَرۡضِۖ وَإِلَى ٱللَّهِ ٱلۡمَصِيرُ ٤٢

---

43. ಅಲ್ಲಾಹು ಮೋಡಗಳನ್ನು ಚಲಿಸುವಂತೆ ಮಾಡುವುದನ್ನು ನೀವು ನೋಡಿಲ್ಲವೇ? ನಂತರ ಅವನು ಅವುಗಳನ್ನು ಒಟ್ಟು

أَلَمۡ تَرَ أَنَّ ٱللَّهَ يُزۡجِي سَحَابٗا ثُمَّ يُؤَلِّفُ بَيۡنَهُۥ ثُمَّ يَجۡعَلُهُۥ رُكَامٗا فَتَرَى ٱلۡوَدۡقَ يَخۡرُجُ مِنۡ

خِلَٰلِهِۦ وَيُنَزِّلُ مِنَ ٱلسَّمَآءِ مِن جِبَالٖ فِيهَا مِنۢ بَرَدٖ فَيُصِيبُ بِهِۦ مَن يَشَآءُ وَيَصۡرِفُهُۥ عَن مَّن يَشَآءُۖ يَكَادُ سَنَا بَرۡقِهِۦ يَذۡهَبُ بِٱلۡأَبۡصَٰرِ ﴿٤٣﴾

ಸೇರಿಸುತ್ತಾನೆ. ನಂತರ ಅವುಗಳನ್ನು ಪದರ ಪದರವಾಗಿ ರಾಶಿ ಮಾಡುತ್ತಾನೆ. ಆಗ ಅದರ ನಡುವಿನಿಂದ ಮಳೆ ನೀರು ಹೊರಬರುವುದನ್ನು ನೀವು ನೋಡುತ್ತೀರಿ. ಅವನು ಆಕಾಶದಿಂದ—ಅಲ್ಲಿರುವ ಬೆಟ್ಟಗಳಂತಹ ಮೋಡಗಳ ರಾಶಿಗಳಿಂದ—ಆಲಿಕಲ್ಲುಗಳನ್ನು ಬೀಳಿಸುತ್ತಾನೆ. ನಂತರ ಅವನು ಇಚ್ಛಿಸುವವರಿಗೆ ಅದು ತಗಲುವಂತೆ ಮಾಡುತ್ತಾನೆ ಮತ್ತು ಅವನು ಇಚ್ಛಿಸುವವರಿಂದ ಅದನ್ನು ದೂರ ಸರಿಸುತ್ತಾನೆ. ಅದರ ಮಿಂಚಿನ ಹೊಳಪು ಇನ್ನೇನು ದೃಷ್ಟಿಗಳನ್ನೇ ಕಿತ್ತು ಬಿಡುವಂತಿದೆ.

---

44. ಅಲ್ಲಾಹು ರಾತ್ರಿ-ಹಗಲುಗಳನ್ನು ಒಂದರ ನಂತರ ಒಂದರಂತೆ ಬದಲಾಯಿಸುತ್ತಾನೆ. ನಿಶ್ಚಯವಾಗಿಯೂ ದೃಷ್ಟಿಯುಳ್ಳವರಿಗೆ ಅದರಲ್ಲಿ ನೀತಿಪಾಠವಿದೆ.

يُقَلِّبُ ٱللَّهُ ٱلَّيۡلَ وَٱلنَّهَارَۚ إِنَّ فِي ذَٰلِكَ لَعِبۡرَةٗ لِّأُوْلِي ٱلۡأَبۡصَٰرِ ﴿٤٤﴾

---

45. ಅಲ್ಲಾಹು ಎಲ್ಲಾ ಜೀವರಾಶಿಗಳನ್ನು ನೀರಿನಿಂದ ಸೃಷ್ಟಿಸಿದನು. ಕೆಲವು ಅವುಗಳ ಹೊಟ್ಟೆಯ ಮೇಲೆ ತೆವಳುತ್ತವೆ. ಕೆಲವು ಎರಡು ಕಾಲುಗಳ ಮೇಲೆ ಚಲಿಸುತ್ತವೆ. ಕೆಲವು ನಾಲ್ಕು ಕಾಲುಗಳಲ್ಲಿ ಚಲಿಸುತ್ತವೆ. ಅಲ್ಲಾಹು ಅವನು ಇಚ್ಛಿಸುವುದನ್ನು ಸೃಷ್ಟಿಸುತ್ತಾನೆ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

وَٱللَّهُ خَلَقَ كُلَّ دَآبَّةٖ مِّن مَّآءٖۖ فَمِنۡهُم مَّن يَمۡشِي عَلَىٰ بَطۡنِهِۦ وَمِنۡهُم مَّن يَمۡشِي عَلَىٰ رِجۡلَيۡنِ وَمِنۡهُم مَّن يَمۡشِي عَلَىٰٓ أَرۡبَعٖۚ يَخۡلُقُ ٱللَّهُ مَا يَشَآءُۚ إِنَّ ٱللَّهَ عَلَىٰ كُلِّ شَيۡءٖ قَدِيرٞ ﴿٤٥﴾

---

46. ನಾವು ಸ್ಪಷ್ಟವಾದ ವಚನಗಳನ್ನು ಅವತೀರ್ಣಗೊಳಿಸಿದ್ದೇವೆ. ಅಲ್ಲಾಹು ಅವನು ಇಚ್ಛಿಸುವವರಿಗೆ ನೇರ ಮಾರ್ಗವನ್ನು ತೋರಿಸುತ್ತಾನೆ.

لَّقَدۡ أَنزَلۡنَآ ءَايَٰتٖ مُّبَيِّنَٰتٖۚ وَٱللَّهُ يَهۡدِي مَن يَشَآءُ إِلَىٰ صِرَٰطٖ مُّسۡتَقِيمٖ ﴿٤٦﴾

---

47. ಅವರು (ಕಪಟವಿಶ್ವಾಸಿಗಳು) ಹೇಳುತ್ತಾರೆ: “ನಾವು ಅಲ್ಲಾಹನಲ್ಲಿ ಮತ್ತು ಸಂದೇಶವಾಹಕರಲ್ಲಿ ವಿಶ್ವಾಸವಿಟ್ಟಿದ್ದೇವೆ ಮತ್ತು ಅವರನ್ನು ಅನುಸರಿಸುತ್ತೇವೆ.” ನಂತರ ಅದರ ಬಳಿಕವೂ ಅವರಲ್ಲಿ ಒಂದು ಗುಂಪು ವಿಮುಖರಾಗಿ ಹೋಗುತ್ತಾರೆ. ಅವರು ಸತ್ಯವಿಶ್ವಾಸಿಗಳೇ ಅಲ್ಲ.

وَيَقُولُونَ ءَامَنَّا بِٱللَّهِ وَبِٱلرَّسُولِ وَأَطَعۡنَا ثُمَّ يَتَوَلَّىٰ فَرِيقٞ مِّنۡهُم مِّنۢ بَعۡدِ ذَٰلِكَۚ وَمَآ أُوْلَٰٓئِكَ بِٱلۡمُؤۡمِنِينَ ﴿٤٧﴾

---

48. ಅವರ ಮಧ್ಯೆ ತೀರ್ಪು ನೀಡಲು ಅವರನ್ನು ಅಲ್ಲಾಹು ಮತ್ತು ಸಂದೇಶವಾಹಕರ ಕಡೆಗೆ ಆಮಂತ್ರಿಸಲಾದರೆ, ಅವರಲ್ಲಿ ಒಂದು ಗುಂಪು ಬೆನ್ನು ತೋರಿಸಿ ನಡೆಯುತ್ತಾರೆ.

وَإِذَا دُعُوٓاْ إِلَى ٱللَّهِ وَرَسُولِهِۦ لِيَحۡكُمَ بَيۡنَهُمۡ إِذَا فَرِيقٞ مِّنۡهُم مُّعۡرِضُونَ ﴿٤٨﴾

---

49. ಸತ್ಯವು ಅವರ ಕಡೆಯಿದ್ದರೆ ಅವರು ಪ್ರವಾದಿಯ ಬಳಿಗೆ ವಿನಮ್ರತೆಯಿಂದ ಬರುತ್ತಾರೆ.

وَإِن يَكُن لَّهُمُ ٱلۡحَقُّ يَأۡتُوٓاْ إِلَيۡهِ مُذۡعِنِينَ ﴿٤٩﴾

---

50. ಅವರ ಹೃದಯಗಳಲ್ಲಿ ರೋಗವಿದೆಯೇ? ಅಥವಾ ಅವರಿಗೆ

أَفِي قُلُوبِهِم مَّرَضٌ أَمِ ٱرۡتَابُوٓاْ أَمۡ يَخَافُونَ أَن

ಸಂಶಯವಿದೆಯೇ? ಅಥವಾ ಅಲ್ಲಾಹು ಮತ್ತು ಅವನ ಸಂದೇಶವಾಹಕರು ಅವರಿಗೆ ಅನ್ಯಾಯ ಮಾಡುವರೆಂದು ಅವರಿಗೆ ಭಯವಿದೆಯೇ? ಅಲ್ಲ. ವಾಸ್ತವವಾಗಿ ಅವರೇ ಅಕ್ರಮಿಗಳು.

يَحِيفَ ٱللَّهُ عَلَيۡهِمۡ وَرَسُولُهُۥۚ بَلۡ أُوْلَٰٓئِكَ هُمُ ٱلظَّٰلِمُونَ ٥٠

---

51. ಸತ್ಯವಿಶ್ವಾಸಿಗಳನ್ನು—ಅವರ ನಡುವೆ ತೀರ್ಪು ನೀಡಲು—ಅಲ್ಲಾಹು ಮತ್ತು ಸಂದೇಶವಾಹಕರ ಕಡೆಗೆ ಆಮಂತ್ರಿಸಲಾದರೆ, "ನಾವು ಕೇಳಿದ್ದೇವೆ ಮತ್ತು ಅನುಸರಿಸಿದ್ದೇವೆ" ಎಂದು ಅವರು ಹೇಳುತ್ತಾರೆ. ಅವರೇ ಯಶಸ್ವಿಯಾದವರು.

إِنَّمَا كَانَ قَوۡلَ ٱلۡمُؤۡمِنِينَ إِذَا دُعُوٓاْ إِلَى ٱللَّهِ وَرَسُولِهِۦ لِيَحۡكُمَ بَيۡنَهُمۡ أَن يَقُولُواْ سَمِعۡنَا وَأَطَعۡنَاۚ وَأُوْلَٰٓئِكَ هُمُ ٱلۡمُفۡلِحُونَ ٥١

---

52. ಅಲ್ಲಾಹನನ್ನು ಮತ್ತು ಸಂದೇಶವಾಹಕರನ್ನು ಅನುಸರಿಸುವವರು, ಅಲ್ಲಾಹನನ್ನು ಭಯಪಡುವವರು ಮತ್ತು ಅಲ್ಲಾಹನ ಶಿಕ್ಷೆಯನ್ನು ಹೆದರುವವರು ಯಾರೋ ಅವರೇ ಜಯಗಳಿಸಿದವರು.

وَمَن يُطِعِ ٱللَّهَ وَرَسُولَهُۥ وَيَخۡشَ ٱللَّهَ وَيَتَّقۡهِ فَأُوْلَٰٓئِكَ هُمُ ٱلۡفَآئِزُونَ ٥٢

---

53. ನೀವೇನಾದರೂ ಆಜ್ಞಾಪಿಸಿದರೆ ಅವರು ಖಂಡಿತ ಹೊರಟು ಬರುತ್ತಾರೆಂದು ಅವರು (ಕಪಟವಿಶ್ವಾಸಿಗಳು) ಅಲ್ಲಾಹನ ಮೇಲೆ ಪ್ರಬಲವಾಗಿ ಆಣೆ ಮಾಡುತ್ತಾ ಹೇಳುತ್ತಾರೆ. ಹೇಳಿರಿ: "ನೀವು ಆಣೆ ಮಾಡಬೇಡಿ. ನಿಮ್ಮ ಆಜ್ಞಾಪಾಲನೆ ಹೇಗಿದೆಯೆಂದು ಎಲ್ಲರಿಗೂ ತಿಳಿದಿದೆ. ನೀವು ಮಾಡುತ್ತಿರುವ ಕರ್ಮಗಳ ಬಗ್ಗೆ ಅಲ್ಲಾಹು ಸೂಕ್ಷ್ಮವಾಗಿ ತಿಳಿದಿದ್ದಾನೆ."

وَأَقۡسَمُواْ بِٱللَّهِ جَهۡدَ أَيۡمَٰنِهِمۡ لَئِنۡ أَمَرۡتَهُمۡ لَيَخۡرُجُنَّۖ قُل لَّا تُقۡسِمُواْۖ طَاعَةٞ مَّعۡرُوفَةٌۚ إِنَّ ٱللَّهَ خَبِيرُۢ بِمَا تَعۡمَلُونَ ٥٣

---

54. ಹೇಳಿರಿ: "ನೀವು ಅಲ್ಲಾಹನ ಆಜ್ಞಾಪಾಲನೆ ಮಾಡಿರಿ ಮತ್ತು ಸಂದೇಶವಾಹಕರ ಆಜ್ಞಾಪಾಲನೆ ಮಾಡಿರಿ. ನೀವೇನಾದರೂ ಮುಖ ತಿರುಗಿಸಿ ನಡೆದರೆ, ಅವರ (ಪ್ರವಾದಿಯ) ಹೊಣೆಯು ಅವರಿಗೆ ವಹಿಸಿದ ವಿಷಯಗಳು ಮಾತ್ರ. ನಿಮ್ಮ ಹೊಣೆಯು ನಿಮಗೆ ವಹಿಸಿದ ವಿಷಯಗಳು ಮಾತ್ರ. ನೀವು ಅವರ ಆಜ್ಞಾಪಾಲನೆ ಮಾಡಿದರೆ ಸನ್ಮಾರ್ಗವನ್ನು ಪಡೆಯುತ್ತೀರಿ. ಸಂದೇಶವಾಹಕರ ಹೊಣೆಯು (ಸಂದೇಶವನ್ನು) ಸ್ಪಷ್ಟವಾಗಿ ತಲುಪಿಸಿಕೊಡುವುದು ಮಾತ್ರ."

قُلۡ أَطِيعُواْ ٱللَّهَ وَأَطِيعُواْ ٱلرَّسُولَۖ فَإِن تَوَلَّوۡاْ فَإِنَّمَا عَلَيۡهِ مَا حُمِّلَ وَعَلَيۡكُم مَّا حُمِّلۡتُمۡۖ وَإِن تُطِيعُوهُ تَهۡتَدُواْۚ وَمَا عَلَى ٱلرَّسُولِ إِلَّا ٱلۡبَلَٰغُ ٱلۡمُبِينُ ٥٤

---

55. ಅಲ್ಲಾಹು ನಿಮ್ಮಲ್ಲಿರುವ ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮ-ವೆಸಗಿದವರಿಗೆ, ಅವರಿಗಿಂತ ಮೊದಲಿನವರಿಗೆ ಭೂಮಿಯಲ್ಲಿ ಪ್ರಾತಿನಿಧ್ಯ ನೀಡಿದಂತೆ ಅವರಿಗೂ ಖಂಡಿತ ಪ್ರಾತಿನಿಧ್ಯವನ್ನು ನೀಡುವನು, ಅವನು ಅವರಿಗೆ ಸಂತೃಪ್ತಿಯಿಂದ ನೀಡಿದ ಅವರ ಧರ್ಮವನ್ನು (ಭೂಮಿಯಲ್ಲಿ) ಪ್ರಬಲವಾಗಿ ಸ್ಥಾಪಿಸುವನು ಮತ್ತು ಅವರು ಅನುಭವಿಸುತ್ತಿರುವ ಭಯವನ್ನು ನಿರ್ಭಯವಾಗಿ ಬದಲಾಯಿಸುವನೆಂದು ವಾಗ್ದಾನ ಮಾಡಿದ್ದಾನೆ. ಅವರು

وَعَدَ ٱللَّهُ ٱلَّذِينَ ءَامَنُواْ مِنكُمۡ وَعَمِلُواْ ٱلصَّٰلِحَٰتِ لَيَسۡتَخۡلِفَنَّهُمۡ فِي ٱلۡأَرۡضِ كَمَا ٱسۡتَخۡلَفَ ٱلَّذِينَ مِن قَبۡلِهِمۡ وَلَيُمَكِّنَنَّ لَهُمۡ دِينَهُمُ ٱلَّذِي ٱرۡتَضَىٰ لَهُمۡ وَلَيُبَدِّلَنَّهُم مِّنۢ بَعۡدِ خَوۡفِهِمۡ أَمۡنٗاۚ يَعۡبُدُونَنِي لَا يُشۡرِكُونَ بِي شَيۡـٔٗاۚ وَمَن كَفَرَ بَعۡدَ ذَٰلِكَ فَأُوْلَٰٓئِكَ هُمُ

ٱلۡفَٰسِقُونَ ﴿٥٥﴾

ನನ್ನನ್ನು ಮಾತ್ರ ಆರಾಧಿಸುತ್ತಾರೆ ಮತ್ತು ನನ್ನೊಂದಿಗೆ ಯಾರನ್ನೂ ಸಹಭಾಗಿಯಾಗಿ ಮಾಡುವುದಿಲ್ಲ. ಯಾರು ಅದರ ಬಳಿಕವೂ ಸತ್ಯವನ್ನು ನಿಷೇಧಿಸುತ್ತಾರೋ ಅವರೇ ನಿಜವಾದ ದುಷ್ಕರ್ಮಿಗಳು.

---

وَأَقِيمُواْ ٱلصَّلَوٰةَ وَءَاتُواْ ٱلزَّكَوٰةَ وَأَطِيعُواْ ٱلرَّسُولَ لَعَلَّكُمۡ تُرۡحَمُونَ ﴿٥٦﴾

56. ನೀವು ನಮಾಝನ್ನು ಸಂಸ್ಥಾಪಿಸಿರಿ, ಝಕಾತ್ ನೀಡಿರಿ ಮತ್ತು ಸಂದೇಶವಾಹಕರ ಆಜ್ಞೆಗಳನ್ನು ಪಾಲಿಸಿರಿ. ನಿಮ್ಮ ಮೇಲೆ ದಯೆ ತೋರಲಾಗುವುದಕ್ಕಾಗಿ.

---

لَا تَحۡسَبَنَّ ٱلَّذِينَ كَفَرُواْ مُعۡجِزِينَ فِي ٱلۡأَرۡضِۚ وَمَأۡوَىٰهُمُ ٱلنَّارُۖ وَلَبِئۡسَ ٱلۡمَصِيرُ ﴿٥٧﴾

57. ಸತ್ಯನಿಷೇಧಿಗಳು ಭೂಮಿಯಲ್ಲಿ ಅಲ್ಲಾಹನನ್ನು ಸೋಲಿಸುವರೆಂದು ನೀವು ಎಂದಿಗೂ ಭಾವಿಸಬೇಡಿ. ಅವರ ವಾಸಸ್ಥಳವು ನರಕವಾಗಿದೆ. ಆ ಗಮ್ಯಸ್ಥಾನವು ಬಹಳ ನಿಕೃಷ್ಟವಾಗಿದೆ.

---

يَٰٓأَيُّهَا ٱلَّذِينَ ءَامَنُواْ لِيَسۡتَـٔۡذِنكُمُ ٱلَّذِينَ مَلَكَتۡ أَيۡمَٰنُكُمۡ وَٱلَّذِينَ لَمۡ يَبۡلُغُواْ ٱلۡحُلُمَ مِنكُمۡ ثَلَٰثَ مَرَّٰتٖۚ مِّن قَبۡلِ صَلَوٰةِ ٱلۡفَجۡرِ وَحِينَ تَضَعُونَ ثِيَابَكُم مِّنَ ٱلظَّهِيرَةِ وَمِنۢ بَعۡدِ صَلَوٰةِ ٱلۡعِشَآءِۚ ثَلَٰثُ عَوۡرَٰتٖ لَّكُمۡۚ لَيۡسَ عَلَيۡكُمۡ وَلَا عَلَيۡهِمۡ جُنَاحُۢ بَعۡدَهُنَّۚ طَوَّٰفُونَ عَلَيۡكُم بَعۡضُكُمۡ عَلَىٰ بَعۡضٖۚ كَذَٰلِكَ يُبَيِّنُ ٱللَّهُ لَكُمُ ٱلۡأٓيَٰتِۗ وَٱللَّهُ عَلِيمٌ حَكِيمٞ ﴿٥٨﴾

58. ಓ ಸತ್ಯವಿಶ್ವಾಸಿಗಳೇ! ನಿಮ್ಮ ಅಧೀನದಲ್ಲಿರುವ ಗುಲಾಮರು ಮತ್ತು ನಿಮ್ಮಲ್ಲಿ ಪ್ರೌಢಾವಸ್ಥೆಗೆ ತಲುಪದವರು ಮೂರು ವೇಳೆಗಳಲ್ಲಿ ನಿಮ್ಮೊಂದಿಗೆ ಪ್ರವೇಶಾನುಮತಿಯನ್ನು ಕೇಳಲಿ. ಫಜ್ರ್ ನಮಾಝ್‌ಗೆ ಮೊದಲು, ಮಧ್ಯಾಹ್ನದ ವೇಳೆ (ವಿಶ್ರಾಂತಿಗಾಗಿ) ನೀವು ನಿಮ್ಮ ಉಡುಪುಗಳನ್ನು ಕಳಚಿಡುವಾಗ ಮತ್ತು ಇಶಾ ನಮಾಝ್‌ನ ಬಳಿಕ. ಇವು ನಿಮ್ಮ ಮೂರು ಖಾಸಗಿ ಸಮಯಗಳಾಗಿವೆ. ಇವುಗಳ ಹೊರತಾದ ಸಮಯಗಳಲ್ಲಿ ನಿಮಗೆ ಅಥವಾ ಅವರಿಗೆ ದೋಷವಿಲ್ಲ. ನೀವು ಪರಸ್ಪರ ಒಬ್ಬರ ಬಳಿಗೆ ಇನ್ನೊಬ್ಬರು ಬರುತ್ತಲೂ ಹೋಗುತ್ತಲೂ ಇರುವವರಾಗಿದ್ದೀರಿ. ಈ ರೀತಿ ಅಲ್ಲಾಹು ನಿಮಗೆ ವಚನಗಳನ್ನು ವಿವರಿಸಿಕೊಡುತ್ತಾನೆ. ಅಲ್ಲಾಹು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ.

---

وَإِذَا بَلَغَ ٱلۡأَطۡفَٰلُ مِنكُمُ ٱلۡحُلُمَ فَلۡيَسۡتَـٔۡذِنُواْ كَمَا ٱسۡتَـٔۡذَنَ ٱلَّذِينَ مِن قَبۡلِهِمۡۚ كَذَٰلِكَ يُبَيِّنُ ٱللَّهُ لَكُمۡ ءَايَٰتِهِۦۗ وَٱللَّهُ عَلِيمٌ حَكِيمٞ ﴿٥٩﴾

59. ನಿಮ್ಮ ಮಕ್ಕಳು ಪ್ರೌಢಾವಸ್ಥೆಯನ್ನು ತಲುಪಿದರೆ ಅವರಿಗಿಂತ ಮೊದಲಿನವರು ಪ್ರವೇಶಾನುಮತಿ ಕೇಳುವಂತೆ ಅವರೂ ಪ್ರವೇಶಾನುಮತಿ ಕೇಳಲಿ. ಈ ರೀತಿ ಅಲ್ಲಾಹು ನಿಮಗೆ ಅವನ ವಚನಗಳನ್ನು ವಿವರಿಸಿಕೊಡುತ್ತಾನೆ. ಅಲ್ಲಾಹು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ.

---

وَٱلۡقَوَٰعِدُ مِنَ ٱلنِّسَآءِ ٱلَّٰتِي لَا يَرۡجُونَ نِكَاحٗا فَلَيۡسَ عَلَيۡهِنَّ جُنَاحٌ أَن يَضَعۡنَ ثِيَابَهُنَّ غَيۡرَ مُتَبَرِّجَٰتِۭ بِزِينَةٖۖ وَأَن يَسۡتَعۡفِفۡنَ خَيۡرٞ لَّهُنَّۗ وَٱللَّهُ سَمِيعٌ عَلِيمٞ ﴿٦٠﴾

60. ವಿವಾಹವಾಗುವ ಬಯಕೆಯಿಲ್ಲದ ವಯಸ್ಸಾದ (ಋತುಸ್ರಾವ ನಿಂತ) ಮಹಿಳೆಯರು ತಮ್ಮ ಹೊರ ಉಡುಪುಗಳನ್ನು ಕಳಚಿ-ಡುವುದರಲ್ಲಿ ದೋಷವಿಲ್ಲ—ಆದರೆ ಅವರು ಸೌಂದರ್ಯವನ್ನು ಪ್ರದರ್ಶಿಸುವ ಉದ್ದೇಶವನ್ನು ಹೊಂದಿರಬಾರದು. ಆದರೆ ಅವರು ಈ ವಿಷಯದಲ್ಲಿ ಸೂಕ್ಷ್ಮತೆ ಪಾಲಿಸುವುದು ಅವರಿಗೆ ಅತ್ಯುತ್ತಮವಾಗಿದೆ. ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

61. ಕುರುಡ, ಕುಂಟ, ರೋಗಿ ಮುಂತಾದವರಿಗೆ (ವಿನಾಯಿ- ತಿಯಿರುವವರಿಗೆ) ಮತ್ತು ಸ್ವತಃ ನಿಮಗೂ—ನೀವು ನಿಮ್ಮ ಮನೆಗಳಲ್ಲಿ, ನಿಮ್ಮ ತಂದೆಯಂದಿರ ಮನೆಗಳಲ್ಲಿ, ನಿಮ್ಮ ತಾಯಂದಿರ ಮನೆಗಳಲ್ಲಿ, ನಿಮ್ಮ ಸಹೋದರರ ಮನೆಗಳಲ್ಲಿ, ನಿಮ್ಮ ಸಹೋದರಿಯರ ಮನೆಗಳಲ್ಲಿ, ನಿಮ್ಮ ತಂದೆಯ ಸಹೋದರರ ಮನೆಗಳಲ್ಲಿ, ನಿಮ್ಮ ತಂದೆಯ ಸಹೋದರಿಯರ ಮನೆಗಳಲ್ಲಿ, ನಿಮ್ಮ ತಾಯಿಯ ಸಹೋದರರ ಮನೆಗಳಲ್ಲಿ, ನಿಮ್ಮ ತಾಯಿಯ ಸಹೋದರಿಯರ ಮನೆಗಳಲ್ಲಿ, ಕೀಲಿಕೈಗಳು ನಿಮ್ಮ ವಶದಲ್ಲಿರುವ ಮನೆಗಳಲ್ಲಿ ಅಥವಾ ನಿಮ್ಮ ಸ್ನೇಹಿತರ ಮನೆಗಳಲ್ಲಿ ಆಹಾರ ಸೇವಿಸುವುದರಲ್ಲಿ ದೋಷವಿಲ್ಲ.[1] ನೀವು ಎಲ್ಲರೂ ಒಟ್ಟಾಗಿ ಆಹಾರ ಸೇವಿಸುವುದರಲ್ಲೂ ಅಥವಾ ಬೇರೆ ಬೇರೆಯಾಗಿ ಸೇವಿಸುವುದರಲ್ಲೂ ನಿಮಗೆ ದೋಷವಿಲ್ಲ. ಆದರೆ ನೀವು ಮನೆಯನ್ನು ಪ್ರವೇಶಿಸುವಾಗ ಮನೆಯವರಿಗೆ ಸಲಾಂ ಹೇಳಿರಿ. ಅಲ್ಲಾಹನ ಕಡೆಯ ಸಮೃದ್ಧವಾದ ಮತ್ತು ಪರಿಶುದ್ಧವಾದ ಪ್ರಾರ್ಥನೆಯೆಂಬ ನೆಲೆಯಲ್ಲಿ. ಈ ರೀತಿ ಅಲ್ಲಾಹು ನಿಮಗೆ ವಚನಗಳನ್ನು ವಿವರಿಸಿಕೊಡುತ್ತಾನೆ. ನೀವು ಆಲೋಚಿಸುವುದಕ್ಕಾಗಿ.

لَّيۡسَ عَلَى ٱلۡأَعۡمَىٰ حَرَجٞ وَلَا عَلَى ٱلۡأَعۡرَجِ حَرَجٞ وَلَا عَلَى ٱلۡمَرِيضِ حَرَجٞ وَلَا عَلَىٰٓ أَنفُسِكُمۡ أَن تَأۡكُلُواْ مِنۢ بُيُوتِكُمۡ أَوۡ بُيُوتِ ءَابَآئِكُمۡ أَوۡ بُيُوتِ أُمَّهَٰتِكُمۡ أَوۡ بُيُوتِ إِخۡوَٰنِكُمۡ أَوۡ بُيُوتِ أَخَوَٰتِكُمۡ أَوۡ بُيُوتِ أَعۡمَٰمِكُمۡ أَوۡ بُيُوتِ عَمَّٰتِكُمۡ أَوۡ بُيُوتِ أَخۡوَٰلِكُمۡ أَوۡ بُيُوتِ خَٰلَٰتِكُمۡ أَوۡ مَا مَلَكۡتُم مَّفَاتِحَهُۥٓ أَوۡ صَدِيقِكُمۡۚ لَيۡسَ عَلَيۡكُمۡ جُنَاحٌ أَن تَأۡكُلُواْ جَمِيعًا أَوۡ أَشۡتَاتٗاۚ فَإِذَا دَخَلۡتُم بُيُوتٗا فَسَلِّمُواْ عَلَىٰٓ أَنفُسِكُمۡ تَحِيَّةٗ مِّنۡ عِندِ ٱللَّهِ مُبَٰرَكَةٗ طَيِّبَةٗۚ كَذَٰلِكَ يُبَيِّنُ ٱللَّهُ لَكُمُ ٱلۡأٓيَٰتِ لَعَلَّكُمۡ تَعۡقِلُونَ ٦١

62. ಸತ್ಯವಿಶ್ವಾಸಿಗಳೆಂದರೆ ಅಲ್ಲಾಹನಲ್ಲಿ ಮತ್ತು ಅವನ ಸಂದೇಶ- ವಾಹಕರಲ್ಲಿ ವಿಶ್ವಾಸವಿಟ್ಟವರು ಮಾತ್ರ. ಅವರು (ಮುಸಲ್ಮಾನರ ಹಿತಕ್ಕಾಗಿ) ಸಂದೇಶವಾಹಕರು ಸೇರಿಸಿದ ಸಭೆಯಲ್ಲಿ ಅವರ ಜೊತೆಗಿರುವಾಗ, ಅವರ ಅನುಮತಿಯಿಲ್ಲದೆ ಸಭೆಯಿಂದ ಹೊರಹೋಗುವುದಿಲ್ಲ. (ಪ್ರವಾದಿಯವರೇ) ಯಾರು ನಿಮ್ಮೊಡನೆ ಅನುಮತಿ ಬೇಡುತ್ತಾರೋ ಅವರು ಅಲ್ಲಾಹನಲ್ಲಿ ಮತ್ತು ಅವನ ಸಂದೇಶವಾಹಕರಲ್ಲಿ ವಿಶ್ವಾಸವಿಟ್ಟವರೇ ಆಗಿದ್ದಾರೆ. ಅವರು ಅವರ ಯಾವುದಾದರೂ ಕೆಲಸಗಳಿಗೆ ಹೋಗಲು ನಿಮ್ಮೊಂದಿಗೆ ಅನುಮತಿ ಕೇಳಿದರೆ, ಅವರಲ್ಲಿ ನೀವು ಇಚ್ಛಿಸುವವರಿಗೆ ಅನುಮತಿ ನೀಡಿರಿ ಮತ್ತು ಅವರಿಗೋಸ್ಕರ ಅಲ್ಲಾಹನಲ್ಲಿ ಕ್ಷಮೆಯಾಚಿಸಿರಿ. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

إِنَّمَا ٱلۡمُؤۡمِنُونَ ٱلَّذِينَ ءَامَنُواْ بِٱللَّهِ وَرَسُولِهِۦ وَإِذَا كَانُواْ مَعَهُۥ عَلَىٰٓ أَمۡرٖ جَامِعٖ لَّمۡ يَذۡهَبُواْ حَتَّىٰ يَسۡتَـٔۡذِنُوهُۚ إِنَّ ٱلَّذِينَ يَسۡتَـٔۡذِنُونَكَ أُوْلَٰٓئِكَ ٱلَّذِينَ يُؤۡمِنُونَ بِٱللَّهِ وَرَسُولِهِۦۚ فَإِذَا ٱسۡتَـٔۡذَنُوكَ لِبَعۡضِ شَأۡنِهِمۡ فَأۡذَن لِّمَن شِئۡتَ مِنۡهُمۡ وَٱسۡتَغۡفِرۡ لَهُمُ ٱللَّهَۚ إِنَّ ٱللَّهَ غَفُورٞ رَّحِيمٞ ٦٢

[1] ಜನರು ಅಂಗವಿಕಲರೊಂದಿಗೆ ಮತ್ತು ರೋಗಿಗಳೊಂದಿಗೆ ಕುಳಿತು ಆಹಾರ ಸೇವಿಸುವುದನ್ನು ಅಸಹ್ಯಪಡುತ್ತಿದ್ದರು. ಹಾಗೆಯೇ ಅಂಗವಿಕಲರು ಮತ್ತು ರೋಗಿಗಳು ಕೂಡ ಮುಜುಗರವನ್ನು ತಪ್ಪಿಸಲು ಆರೋಗ್ಯವಂತರೊಡನೆ ಕುಳಿತು ಆಹಾರ ಸೇವಿಸುತ್ತಿರಲಿಲ್ಲ. ಇಂತಹವರೊಡನೆ ಆಹಾರ ಸೇವಿಸುವುದರಲ್ಲಿ ಯಾವುದೇ ದೋಷವಿಲ್ಲವೆಂದು ಅಲ್ಲಾಹು ಇಲ್ಲಿ ಹೇಳುತ್ತಿದ್ದಾನೆ. ಕೀಲಿಕೈಗಳು ವಶದಲ್ಲಿರುವವರು ಎಂದರೆ, ಸಹಾಬಿಗಳು ಯುದ್ಧಕ್ಕೆ ಹೋಗುವಾಗ ಮನೆಯ ಕೀಲಿಕೈಗಳನ್ನು ಯುದ್ಧದಿಂದ ವಿನಾಯಿತಿಯಿರುವವರ ಕೈಗೆ ನೀಡುತ್ತಿದ್ದರು. ಅವರು ಆ ಮನೆಗಳಲ್ಲಿ ಆಹಾರ ಸೇವಿಸಲು ಹಿಂಜರಿಯುತ್ತಿದ್ದರು. ಆ ಮನೆಗಳಲ್ಲಿ ಆಹಾರ ಸೇವಿಸುವುದರಲ್ಲಿ ತಪ್ಪಿಲ್ಲ ಎಂದು ಇಲ್ಲಿ ಹೇಳಲಾಗಿದೆ.

63. ನೀವು ಪರಸ್ಪರ ಒಬ್ಬರನ್ನೊಬ್ಬರು ಕರೆಯುವಂತೆ ಅಲ್ಲಾಹನ ಸಂದೇಶವಾಹಕರನ್ನು ಕರೆಯಬೇಡಿ.[1] ನಿಮ್ಮಲ್ಲಿ ಯಾರಿಗೂ ತಿಳಿಯದಂತೆ ಗುಟ್ಟಾಗಿ (ಪ್ರವಾದಿಯವರ ಸಭೆಯಿಂದ) ತಪ್ಪಿಸಿಕೊ-ಳ್ಳುವವರ (ಕಪಟವಿಶ್ವಾಸಿಗಳ) ಬಗ್ಗೆ ಅಲ್ಲಾಹನಿಗೆ ಬಹಳ ಚೆನ್ನಾಗಿ ತಿಳಿದಿದೆ. ಪ್ರವಾದಿಯವರ ಆಜ್ಞೆಗೆ ವಿರುದ್ಧವಾಗಿ ಸಾಗುವವರು—ಅವರಿಗೇನಾದರೂ ಅನಾಹುತ ಸಂಭವಿಸುವುದರ ಬಗ್ಗೆ ಅಥವಾ ಯಾತನಾಮಯ ಶಿಕ್ಷೆ ಎರಗುವುದರ ಬಗ್ಗೆ ಸದಾ ಭಯಪಡುತ್ತಿರಲಿ.

لَّا تَجْعَلُوا۟ دُعَآءَ ٱلرَّسُولِ بَيْنَكُمْ كَدُعَآءِ بَعْضِكُم بَعْضًا ۚ قَدْ يَعْلَمُ ٱللَّهُ ٱلَّذِينَ يَتَسَلَّلُونَ مِنكُمْ لِوَاذًا ۚ فَلْيَحْذَرِ ٱلَّذِينَ يُخَالِفُونَ عَنْ أَمْرِهِۦٓ أَن تُصِيبَهُمْ فِتْنَةٌ أَوْ يُصِيبَهُمْ عَذَابٌ أَلِيمٌ ﴿٦٣﴾

64. ತಿಳಿಯಿರಿ! ನಿಶ್ಚಯವಾಗಿಯೂ ಭೂಮ್ಯಾಕಾಶಗಳಲ್ಲಿರುವ ವಸ್ತುಗಳೆಲ್ಲವೂ ಅಲ್ಲಾಹನಿಗೆ ಸೇರಿದ್ದು. ನೀವು ಯಾವ ಮಾರ್ಗ-ದಲ್ಲಿದ್ದೀರಿ ಎಂದು ಅವನಿಗೆ ಬಹಳ ಚೆನ್ನಾಗಿ ತಿಳಿದಿದೆ. ಅವರನ್ನು ಅವನ ಬಳಿಗೆ ಮರಳಿಸಲಾಗುವ ದಿನ ಅವನು ಅವರಿಗೆ ಅವರ ಎಲ್ಲಾ ಕರ್ಮಗಳ ಬಗ್ಗೆ ತಿಳಿಸಿಕೊಡುವನು. ಅಲ್ಲಾಹು ಎಲ್ಲಾ ವಿಷಯಗಳ ಬಗ್ಗೆ ತಿಳಿದವನಾಗಿದ್ದಾನೆ.

أَلَآ إِنَّ لِلَّهِ مَا فِى ٱلسَّمَٰوَٰتِ وَٱلْأَرْضِ ۖ قَدْ يَعْلَمُ مَآ أَنتُمْ عَلَيْهِ وَيَوْمَ يُرْجَعُونَ إِلَيْهِ فَيُنَبِّئُهُم بِمَا عَمِلُوا۟ ۗ وَٱللَّهُ بِكُلِّ شَىْءٍ عَلِيمٌۢ ﴿٦٤﴾

# 25. ಅಲ್-ಫುರ್ಕಾನ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسْمِ ٱللَّهِ ٱلرَّحْمَٰنِ ٱلرَّحِيمِ

1. ಸತ್ಯಾಸತ್ಯ ವಿವೇಚಕ ಗ್ರಂಥವನ್ನು (ಕುರ್‌ಆನನ್ನು) ತನ್ನ ದಾಸನಿಗೆ (ಪ್ರವಾದಿಗೆ)—ಅವರು ಸರ್ವಲೋಕದವರಿಗೆ ಒಬ್ಬ ಮುನ್ನೆ-ಚ್ಚರಿಕೆಗಾರನಾಗಲೆಂದು—ಅವತೀರ್ಣಗೊಳಿಸಿದ ಅಲ್ಲಾಹು ಸಮೃದ್ಧಪೂರ್ಣನಾಗಿದ್ದಾನೆ.

تَبَارَكَ ٱلَّذِى نَزَّلَ ٱلْفُرْقَانَ عَلَىٰ عَبْدِهِۦ لِيَكُونَ لِلْعَٰلَمِينَ نَذِيرًا ﴿١﴾

2. ಅಂದರೆ ಭೂಮ್ಯಾಕಾಶಗಳ ಸಾರ್ವಭೌಮತ್ವವು ಯಾರಿಗೆ ಸೇರಿದೆಯೋ ಅವನು. ಅವನಿಗೆ ಯಾವುದೇ ಮಕ್ಕಳಿಲ್ಲ. ಸಾರ್ವ-ಭೌಮತ್ವದಲ್ಲಿ ಅವನೊಂದಿಗೆ ಯಾವುದೇ ಸಹಭಾಗಿಗಳಿಲ್ಲ. ಅವನು ಎಲ್ಲಾ ವಸ್ತುಗಳನ್ನೂ ಸೃಷ್ಟಿಸಿ ಅದಕ್ಕೆ ನಿಖರವಾದ ನಿರ್ಣಯವನ್ನು ನಿಶ್ಚಯಿಸಿದ್ದಾನೆ.

ٱلَّذِى لَهُۥ مُلْكُ ٱلسَّمَٰوَٰتِ وَٱلْأَرْضِ وَلَمْ يَتَّخِذْ وَلَدًا وَلَمْ يَكُن لَّهُۥ شَرِيكٌ فِى ٱلْمُلْكِ وَخَلَقَ كُلَّ شَىْءٍ فَقَدَّرَهُۥ تَقْدِيرًا ﴿٢﴾

3. ಅವರು ಅವನನ್ನು ಬಿಟ್ಟು ಬೇರೆ ದೇವರುಗಳನ್ನು ಸ್ವೀಕರಿಸಿದ್ದಾರೆ. ಆದರೆ, ಆ ದೇವರುಗಳು ಯಾವುದೇ ವಸ್ತುವನ್ನು ಸೃಷ್ಟಿಸುವುದಿಲ್ಲ. ವಾಸ್ತವವಾಗಿ ಅವರೇ ಸೃಷ್ಟಿಗಳು. ಸ್ವಯಂ ತಮಗೂ ಕೂಡ

وَٱتَّخَذُوا۟ مِن دُونِهِۦٓ ءَالِهَةً لَّا يَخْلُقُونَ شَيْـًٔا وَهُمْ يُخْلَقُونَ وَلَا يَمْلِكُونَ لِأَنفُسِهِمْ ضَرًّا

[1] ಅಂದರೆ ನೀವು ಪ್ರವಾದಿಯವರನ್ನು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಓ ಮುಹಮ್ಮದ್ ಎಂದು ಕರೆಯಬೇಡಿ. ಬದಲಿಗೆ, ಓ ಪ್ರವಾದಿಯವರೇ, ಓ ಅಲ್ಲಾಹನ ಸಂದೇಶವಾಹಕರೇ ಎಂದು ಕರೆಯಿರಿ.

ಯಾವುದೇ ತೊಂದರೆ ಅಥವಾ ಉಪಕಾರವನ್ನು ಮಾಡುವ ಸಾಮರ್ಥ್ಯವನ್ನು ಅವರು ಹೊಂದಿಲ್ಲ. ಮರಣ, ಜೀವನ, ಪುನರುತ್ಥಾನ ಮುಂತಾದ ಯಾವುದೂ ಅವರ ವಶದಲ್ಲಿಲ್ಲ.

وَلَا نَفْعًا وَلَا يَمْلِكُونَ مَوْتًا وَلَا حَيَوٰةً وَلَا نُشُورًا ٣

---

4. ಸತ್ಯನಿಷೇಧಿಗಳು ಹೇಳಿದರು: "ಈ ಕುರ್‌ಆನ್ ಸುಳ್ಳಿನ ಕಂತೆಯಾಗಿದೆ. ಅವನು (ಪ್ರವಾದಿ) ಇದನ್ನು ಸ್ವಯಂ ರಚಿಸಿದ್ದಾನೆ. ಬೇರೆ ಕೆಲವರು ಕೂಡ ಅದಕ್ಕೆ ಸಹಾಯ ಮಾಡಿದ್ದಾರೆ." ಇವರು ಮಹಾ ಅನ್ಯಾಯವನ್ನು ಮತ್ತು ಸುಳ್ಳಾರೋಪವನ್ನು ಮಾಡಿದ್ದಾರೆ.

وَقَالَ ٱلَّذِينَ كَفَرُوٓا۟ إِنْ هَٰذَآ إِلَّآ إِفْكٌ ٱفْتَرَىٰهُ وَأَعَانَهُۥ عَلَيْهِ قَوْمٌ ءَاخَرُونَ ۖ فَقَدْ جَآءُو ظُلْمًا وَزُورًا ٤

---

5. ಅವರು ಹೇಳಿದರು: "ಇದು ಪ್ರಾಚೀನ ಕಾಲದ ಜನರ ಪುರಾಣಗಳು. ಅವನು (ಪ್ರವಾದಿ) ಇದನ್ನು ಸ್ವಯಂ ಬರೆಯುತ್ತಿದ್ದಾನೆ. ಮುಂಜಾನೆ ಮತ್ತು ಸಂಜೆ ಅವನಿಗೆ ಇದನ್ನು ಓದಿಕೊಡಲಾಗುತ್ತಿದೆ."

وَقَالُوٓا۟ أَسَٰطِيرُ ٱلْأَوَّلِينَ ٱكْتَتَبَهَا فَهِىَ تُمْلَىٰ عَلَيْهِ بُكْرَةً وَأَصِيلًا ٥

---

6. ಹೇಳಿರಿ: "ಭೂಮ್ಯಾಕಾಶಗಳಲ್ಲಿರುವ ರಹಸ್ಯಗಳನ್ನು ತಿಳಿದವನೇ ಇದನ್ನು ಅವತೀರ್ಣಗೊಳಿಸಿದ್ದಾನೆ. ನಿಶ್ಚಯವಾಗಿಯೂ ಅವನು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ."

قُلْ أَنزَلَهُ ٱلَّذِى يَعْلَمُ ٱلسِّرَّ فِى ٱلسَّمَٰوَٰتِ وَٱلْأَرْضِ ۚ إِنَّهُۥ كَانَ غَفُورًا رَّحِيمًا ٦

---

7. ಅವರು ಹೇಳುತ್ತಾರೆ: "ಇವನೆಂತಹ ಪ್ರವಾದಿ? ಇವನು ಆಹಾರ ಸೇವಿಸುತ್ತಾನೆ ಮತ್ತು ಪೇಟೆಗಳಲ್ಲಿ ಸಂಚರಿಸುತ್ತಾನೆ. ಇವನ ಜೊತೆಗೆ ಒಬ್ಬ ದೇವದೂತನನ್ನು ಏಕೆ ಕಳುಹಿಸಲಾಗಿಲ್ಲ? ಅವನು ಕೂಡ ಇವನ ಜೊತೆಗೆ ಸೇರಿ ಮುನ್ನೆಚ್ಚರಿಕೆ ನೀಡಬಹುದಿತ್ತಲ್ಲವೇ?

وَقَالُوا۟ مَالِ هَٰذَا ٱلرَّسُولِ يَأْكُلُ ٱلطَّعَامَ وَيَمْشِى فِى ٱلْأَسْوَاقِ ۙ لَوْلَآ أُنزِلَ إِلَيْهِ مَلَكٌ فَيَكُونَ مَعَهُۥ نَذِيرًا ٧

---

8. ಅಥವಾ ಇವನ ಬಳಿ ಒಂದು ನಿಧಿಯನ್ನು ಏಕೆ ಹಾಕಿಲ್ಲ? ಅಥವಾ ಇವನಿಗೆ ಹಣ್ಣುಗಳನ್ನು ತಿನ್ನಲು ಒಂದು ತೋಟವನ್ನು ಏಕೆ ಕೊಡಲಾಗಿಲ್ಲ?" ಆ ಅಕ್ರಮಿಗಳು ಹೇಳಿದರು: "ನೀವು ಮಾಟ ಮಾಡಲಾದ ವ್ಯಕ್ತಿಯನ್ನೇ ಅನುಸರಿಸುತ್ತಿದ್ದೀರಿ."

أَوْ يُلْقَىٰٓ إِلَيْهِ كَنزٌ أَوْ تَكُونُ لَهُۥ جَنَّةٌ يَأْكُلُ مِنْهَا ۚ وَقَالَ ٱلظَّٰلِمُونَ إِن تَتَّبِعُونَ إِلَّا رَجُلًا مَّسْحُورًا ٨

---

9. ನೋಡಿ! ಅವರು ನಿಮ್ಮ ಬಗ್ಗೆ ಹೇಗೆಲ್ಲಾ ಮಾತನಾಡುತ್ತಿದ್ದಾರೆಂದು. ಅದರಿಂದ ಸ್ವತಃ ಅವರೇ ದಾರಿತಪ್ಪುತ್ತಿದ್ದಾರೆ. ಅವರಿಗೆ ಯಾವುದೇ ರೀತಿಯಲ್ಲೂ ಸರಿದಾರಿಗೆ ಬರಲು ಸಾಧ್ಯವಾಗುವುದಿಲ್ಲ.

ٱنظُرْ كَيْفَ ضَرَبُوا۟ لَكَ ٱلْأَمْثَٰلَ فَضَلُّوا۟ فَلَا يَسْتَطِيعُونَ سَبِيلًا ٩

---

10. ಅಲ್ಲಾಹು ಸಮೃದ್ಧಪೂರ್ಣನು. ಅವನು ಇಚ್ಛಿಸಿದರೆ ನಿಮಗೆ ಅವರು ಹೇಳುವುದಕ್ಕಿಂತಲೂ ಶ್ರೇಷ್ಠವಾದುದನ್ನು, ಅಂದರೆ ತಳಭಾಗದಲ್ಲಿ ನದಿಗಳು ಹರಿಯುವ ತೋಟಗಳನ್ನು ದಯಪಾಲಿಸುವನು ಮತ್ತು ನಿಮಗೆ ಮಹಾ ಸೌಧಗಳನ್ನು ದಯಪಾಲಿಸುವನು.

تَبَارَكَ ٱلَّذِىٓ إِن شَآءَ جَعَلَ لَكَ خَيْرًا مِّن ذَٰلِكَ جَنَّٰتٍ تَجْرِى مِن تَحْتِهَا ٱلْأَنْهَٰرُ وَيَجْعَل لَّكَ قُصُورًۢا ١٠

---

11. ಆದರೆ, ಅವರು ಅಂತ್ಯಸಮಯವನ್ನು ನಿಷೇಧಿಸಿದರು.

بَلْ كَذَّبُوا۟ بِٱلسَّاعَةِ ۖ وَأَعْتَدْنَا لِمَن كَذَّبَ

بِٱلسَّاعَةِ سَعِيرًا ﴿١١﴾

ಅಂತ್ಯಸಮಯವನ್ನು ನಿಷೇಧಿಸಿದವರಿಗೆ ನಾವು ಧಗಧಗಿಸುವ ನರಕಾಗ್ನಿಯನ್ನು ಸಿದ್ಧಗೊಳಿಸಿದ್ದೇವೆ.

---

إِذَا رَأَتْهُم مِّن مَّكَانٍۭ بَعِيدٍ سَمِعُوا۟ لَهَا تَغَيُّظًا وَزَفِيرًا ﴿١٢﴾

12. ಅದು ಅವರನ್ನು ವಿದೂರ ಸ್ಥಳದಿಂದ ನೋಡುವಾಗಲೇ, ಅದು ರೋಷಾವೇಶದಿಂದ ಆರ್ಭಟಿಸುವುದನ್ನು ಅವರು ಕೇಳುವರು.

---

وَإِذَآ أُلْقُوا۟ مِنْهَا مَكَانًا ضَيِّقًا مُّقَرَّنِينَ دَعَوْا۟ هُنَالِكَ ثُبُورًا ﴿١٣﴾

13. ಅವರನ್ನು ಸಂಕೋಲೆಗಳಿಂದ ಬಂಧಿಸಿ ನರಕದ ಒಂದು ಇಕ್ಕಟ್ಟಾದ ಸ್ಥಳದಲ್ಲಿ ಎಸೆಯಲಾದರೆ ಅವರು ಅಲ್ಲಿ ವಿನಾಶವನ್ನು ಕೂಗಿ ಕರೆಯುವರು.

---

لَّا تَدْعُوا۟ ٱلْيَوْمَ ثُبُورًا وَٰحِدًا وَٱدْعُوا۟ ثُبُورًا كَثِيرًا ﴿١٤﴾

14. (ಅವರೊಡನೆ ಹೇಳಲಾಗುವುದು).“ಇಂದು ನೀವು ಒಂದು ವಿನಾಶವನ್ನು ಕೂಗಿ ಕರೆಯಬೇಡಿ. ಹಲವಾರು ವಿನಾಶಗಳನ್ನು ಕೂಗಿ ಕರೆಯಿರಿ.”

---

قُلْ أَذَٰلِكَ خَيْرٌ أَمْ جَنَّةُ ٱلْخُلْدِ ٱلَّتِى وُعِدَ ٱلْمُتَّقُونَ ۚ كَانَتْ لَهُمْ جَزَآءً وَمَصِيرًا ﴿١٥﴾

15. ಹೇಳಿರಿ: “ಅದು ಶ್ರೇಷ್ಠವೇ? ಅಥವಾ ದೇವಭಯವುಳ್ಳ-ವರಿಗೆ ವಾಗ್ದಾನ ಮಾಡಲಾದ ಶಾಶ್ವತ ಸ್ವರ್ಗವು ಶ್ರೇಷ್ಠವೇ?” ಅದು ಅವರಿಗೆ ನೀಡಲಾಗುವ ಪ್ರತಿಫಲ ಮತ್ತು ಅವರ ಗಮ್ಯಸ್ಥಾನವಾಗಿದೆ.

---

لَّهُمْ فِيهَا مَا يَشَآءُونَ خَٰلِدِينَ ۚ كَانَ عَلَىٰ رَبِّكَ وَعْدًا مَّسْـُٔولًا ﴿١٦﴾

16. ಅವರಿಗೆ ಅಲ್ಲಿ ಅವರು ಇಚ್ಛಿಸುವುದೆಲ್ಲವೂ ದೊರೆಯುತ್ತದೆ. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುತ್ತಾರೆ. ಅದು ನಿಮ್ಮ ಪರಿಪಾಲಕನ (ಅಲ್ಲಾಹನ) ಉತ್ತರದಾಯಿತ್ವವಿರುವ ವಾಗ್ದಾನವಾಗಿದೆ.

---

وَيَوْمَ يَحْشُرُهُمْ وَمَا يَعْبُدُونَ مِن دُونِ ٱللَّهِ فَيَقُولُ ءَأَنتُمْ أَضْلَلْتُمْ عِبَادِى هَٰٓؤُلَآءِ أَمْ هُمْ ضَلُّوا۟ ٱلسَّبِيلَ ﴿١٧﴾

17. ಅವನು ಅವರನ್ನು ಮತ್ತು ಅಲ್ಲಾಹನನ್ನು ಬಿಟ್ಟು ಅವರು ಆರಾಧಿಸುತ್ತಿದ್ದ ದೇವರುಗಳನ್ನು ಒಟ್ಟುಗೂಡಿಸುವ ದಿನ! ಅವನು (ಆ ದೇವರುಗಳೊಡನೆ) ಕೇಳುವನು: “ನನ್ನ ಈ ದಾಸರನ್ನು ದಾರಿತಪ್ಪಿಸಿದ್ದು ನೀವೋ? ಅಥವಾ ಸ್ವತಃ ಅವರೇ ದಾರಿತಪ್ಪಿದರೋ?”

---

قَالُوا۟ سُبْحَٰنَكَ مَا كَانَ يَنۢبَغِى لَنَآ أَن نَّتَّخِذَ مِن دُونِكَ مِنْ أَوْلِيَآءَ وَلَٰكِن مَّتَّعْتَهُمْ وَءَابَآءَهُمْ حَتَّىٰ نَسُوا۟ ٱلذِّكْرَ وَكَانُوا۟ قَوْمًۢا بُورًا ﴿١٨﴾

18. ಅವರು (ದೇವರುಗಳು) ಹೇಳುವರು: “ನೀನು ಪರಿಶುದ್ಧನು! ನಿನ್ನನ್ನು ಬಿಟ್ಟು ಬೇರೆಯವರನ್ನು ರಕ್ಷಕರಾಗಿ ಸ್ವೀಕರಿಸುವುದು ನಮಗೆ ಯೋಗ್ಯವಲ್ಲ. ಆದರೆ ನೀನು ಅವರಿಗೆ ಮತ್ತು ಅವರ ಪೂರ್ವಜರಿಗೆ ಸವಲತ್ತುಗಳನ್ನು ದಯಪಾಲಿಸಿದೆ. ಎಲ್ಲಿಯ-ವರೆಗೆಂದರೆ ಅವರು ಉಪದೇಶವನ್ನು ಸಂಪೂರ್ಣ ಮರೆತು, ನಾಶವಾಗಿ ಹೋದ ಒಂದು ಜನತೆಯಾಗಿ ಮಾರ್ಪಡುವ ತನಕ.”

---

فَقَدْ كَذَّبُوكُم بِمَا تَقُولُونَ فَمَا تَسْتَطِيعُونَ صَرْفًا وَلَا نَصْرًا ۚ وَمَن يَظْلِم مِّنكُمْ نُذِقْهُ

19. (ಅಲ್ಲಾಹು ಬಹುದೇವಾರಾಧಕರೊಡನೆ ಹೇಳುವನು): “ನೀವು ಏನು ಹೇಳುತ್ತಿದ್ದಿರೋ ಅದನ್ನು ಅವರು (ದೇವರುಗಳು)

| | | |
|---|---|---|
| | ನಿಷೇಧಿಸಿದ್ದಾರೆ. ಇನ್ನು ಶಿಕ್ಷೆಯನ್ನು ದೂರೀಕರಿಸಲು ಅಥವಾ ಯಾವುದೇ ಸಹಾಯ ಪಡೆಯಲು ನಿಮಗೆ ಸಾಧ್ಯವಿಲ್ಲ. ನಿಮ್ಮಲ್ಲಿ ಅಕ್ರಮವೆಸಗಿದವನು[1] ಯಾರೋ ಅವನಿಗೆ ನಾವು ಮಹಾ ಶಿಕ್ಷೆಯ ರುಚಿಯನ್ನು ತೋರಿಸುವೆವು.” | عَذَابًا كَبِيرًا ﴿١٩﴾ |
| 20. | (ಪ್ರವಾದಿಯವರೇ) ನಾವು ನಿಮಗಿಂತ ಮೊದಲು ಕಳುಹಿಸಿದ ಸಂದೇಶವಾಹಕರೆಲ್ಲರೂ ಆಹಾರವನ್ನು ಸೇವಿಸುತ್ತಿದ್ದರು ಮತ್ತು ಪೇಟೆಗಳಲ್ಲಿ ಸಂಚರಿಸುತ್ತಿದ್ದರು. ನಾವು ನಿಮ್ಮಲ್ಲಿ ಒಬ್ಬರನ್ನು ಇನ್ನೊಬ್ಬರಿಗೆ ಪರೀಕ್ಷೆಯನ್ನಾಗಿ ಮಾಡಿದ್ದೇವೆ. ನೀವು ತಾಳ್ಮೆ-ಯಿಂದಿರುತ್ತೀರೋ ಎಂದು ನೋಡಲು. ನಿಮ್ಮ ಪರಿಪಾಲಕನು ಎಲ್ಲವನ್ನೂ ನೋಡುವವನಾಗಿದ್ದಾನೆ. | وَمَآ أَرۡسَلۡنَا قَبۡلَكَ مِنَ ٱلۡمُرۡسَلِينَ إِلَّآ إِنَّهُمۡ لَيَأۡكُلُونَ ٱلطَّعَامَ وَيَمۡشُونَ فِي ٱلۡأَسۡوَاقِۗ وَجَعَلۡنَا بَعۡضَكُمۡ لِبَعۡضٖ فِتۡنَةً أَتَصۡبِرُونَۗ وَكَانَ رَبُّكَ بَصِيرٗا ﴿٢٠﴾ |
| 21. | ನಮ್ಮನ್ನು ಭೇಟಿಯಾಗುವ ನಿರೀಕ್ಷೆಯಿಲ್ಲದವರು ಹೇಳಿದರು: “ನಮ್ಮ ಮೇಲೆ ದೇವದೂತರುಗಳನ್ನು ಏಕೆ ಇಳಿಸಲಾಗುವುದಿಲ್ಲ? ಅಥವಾ ನಮಗೇಕೆ ನಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ನೇರವಾಗಿ ನೋಡಲಾಗುವುದಿಲ್ಲ?” ಅವರು ಸ್ವಯಂ ಅವರ ಬಗ್ಗೆಯೇ ಅಹಂಕಾರಪಡುತ್ತಿದ್ದಾರೆ ಮತ್ತು ಕಡು ಧಿಕ್ಕಾರದಿಂದ ವರ್ತಿಸುತ್ತಿದ್ದಾರೆ. | وَقَالَ ٱلَّذِينَ لَا يَرۡجُونَ لِقَآءَنَا لَوۡلَآ أُنزِلَ عَلَيۡنَا ٱلۡمَلَٰٓئِكَةُ أَوۡ نَرَىٰ رَبَّنَاۗ لَقَدِ ٱسۡتَكۡبَرُواْ فِيٓ أَنفُسِهِمۡ وَعَتَوۡ عُتُوّٗا كَبِيرٗا ﴿٢١﴾ |
| 22. | ಅವರು ದೇವದೂತರುಗಳನ್ನು ನೋಡುವ ದಿನ![2] ಅಂದು ಅಪರಾಧಿಗಳಿಗೆ ಯಾವುದೇ ಸಿಹಿ ಸುದ್ದಿಯಿರುವುದಿಲ್ಲ. ಅವರು (ದೇವದೂತರುಗಳು) ಹೇಳುವರು: “ನಿಷಿದ್ಧವಾಗಿದೆ! ನಿಮಗೆ ಎಲ್ಲವನ್ನೂ ನಿಷೇಧಿಸಲಾಗಿದೆ!”[3] | يَوۡمَ يَرَوۡنَ ٱلۡمَلَٰٓئِكَةَ لَا بُشۡرَىٰ يَوۡمَئِذٖ لِّلۡمُجۡرِمِينَ وَيَقُولُونَ حِجۡرٗا مَّحۡجُورٗا ﴿٢٢﴾ |
| 23. | ಅವರು ಮಾಡಿದ ಕರ್ಮಗಳ ಬಳಿಗೆ ತೆರಳಿ ನಾವು ಅವುಗಳನ್ನು ಚದುರಿದ ಧೂಳಿಯಂತೆ ಮಾಡುವೆವು. | وَقَدِمۡنَآ إِلَىٰ مَا عَمِلُواْ مِنۡ عَمَلٖ فَجَعَلۡنَٰهُ هَبَآءٗ مَّنثُورًا ﴿٢٣﴾ |
| 24. | ಅಂದು ಸ್ವರ್ಗವಾಸಿಗಳು ಅತ್ಯುತ್ತಮ ವಾಸಸ್ಥಳಗಳನ್ನು ಮತ್ತು ಅತ್ಯುತ್ತಮ ವಿಶ್ರಾಂತಿಧಾಮಗಳನ್ನು ಹೊಂದಿರುವರು. | أَصۡحَٰبُ ٱلۡجَنَّةِ يَوۡمَئِذٍ خَيۡرٞ مُّسۡتَقَرّٗا وَأَحۡسَنُ مَقِيلٗا ﴿٢٤﴾ |
| 25. | ಆಕಾಶವು ಮೋಡಗಳ ಸಹಿತ ಒಡೆದು ಛಿದ್ರವಾಗುವ ಮತ್ತು ದೇವದೂತರುಗಳನ್ನು ನಿರಂತರವಾಗಿ ಇಳಿಸಲಾಗುವ ದಿನ! | وَيَوۡمَ تَشَقَّقُ ٱلسَّمَآءُ بِٱلۡغَمَٰمِ وَنُزِّلَ ٱلۡمَلَٰٓئِكَةُ تَنزِيلًا ﴿٢٥﴾ |
| 26. | ಅಂದು ನಿಜವಾದ ಸಾರ್ವಭೌಮತ್ವವು ಪರಮ ದಯಾಳುವಾದ | ٱلۡمُلۡكُ يَوۡمَئِذٍ ٱلۡحَقُّ لِلرَّحۡمَٰنِۚ وَكَانَ يَوۡمًا عَلَى ٱلۡكَٰفِرِينَ عَسِيرٗا ﴿٢٦﴾ |

[1] ಅಂದರೆ ದೇವ ಸಹಭಾಗಿತ್ವ (ಶಿರ್ಕ್) ಮಾಡಿದವನು.

[2] ಅಂದರೆ ಅವರು ಸಾವನ್ನಪ್ಪುವ ದಿನ. ಆಗ ಅವರು ದೇವದೂತರುಗಳನ್ನು ಕಣ್ಣಾರೆ ನೋಡುತ್ತಾರೆ. ಅದು ಅವರಿಗೆ ಖುಷಿ ಅಥವಾ ಸಂತೋಷದ ದಿನವಾಗಿರುವುದಿಲ್ಲ.

[3] ಅಂದರೆ ನಿಮಗೆ ಸ್ವರ್ಗವು ನಿಷಿದ್ಧವಾಗಿದೆ ಮತ್ತು ಸತ್ಯವಿಶ್ವಾಸಿಗಳಿಗೆ ಸಿಗುವ ಸುಖ-ಸಂತೋಷಗಳೆಲ್ಲವೂ ನಿಮಗೆ ನಿಷೇಧಿಸಲಾಗಿದೆ.

ಅಲ್ಲಾಹನಿಗೆ ಮಾತ್ರ. ಅದು ಸತ್ಯನಿಷೇಧಿಗಳಿಗೆ ಸಂಬಂಧಿಸಿದಂತೆ ಅತ್ಯಂತ ದುಷ್ಕರ ದಿನವಾಗಿದೆ.

---

27. ಅಂದು ಅಕ್ರಮವೆಸಗಿದವನು ತನ್ನ ಕೈಗಳನ್ನು ಕಚ್ಚುತ್ತಾ ಹೇಳುವನು: “ನಾನು ಸಂದೇಶವಾಹಕರ ಮಾರ್ಗವನ್ನು ಆರಿಸುತ್ತಿದ್ದರೆ ಎಷ್ಟು ಚೆನ್ನಾಗಿತ್ತು!

وَيَوۡمَ يَعَضُّ ٱلظَّالِمُ عَلَىٰ يَدَيۡهِ يَقُولُ يَٰلَيۡتَنِي
ٱتَّخَذۡتُ مَعَ ٱلرَّسُولِ سَبِيلٗا ٢٧

---

28. ಅಯ್ಯೋ ನನ್ನ ದುರ್ಗತಿಯೇ! ನಾನು ಇವನನ್ನು ಮಿತ್ರನಾಗಿ ಸ್ವೀಕರಿಸದಿದ್ದರೆ ಎಷ್ಟು ಚೆನ್ನಾಗಿತ್ತು!

يَٰوَيۡلَتَىٰ لَيۡتَنِي لَمۡ أَتَّخِذۡ فُلَانًا خَلِيلٗا ٢٨

---

29. ನನ್ನ ಬಳಿಗೆ ಉಪದೇಶವು ಬಂದ ಬಳಿಕವೂ ಅವನು ನನ್ನನ್ನು ಅದರಿಂದ ತಪ್ಪಿಸಿದನು.” ಶೈತಾನನು ಮಾನವನಿಗೆ ದ್ರೋಹವೆಸಗುವವನೇ ಆಗಿದ್ದಾನೆ.

لَّقَدۡ أَضَلَّنِي عَنِ ٱلذِّكۡرِ بَعۡدَ إِذۡ جَآءَنِيۗ وَكَانَ
ٱلشَّيۡطَٰنُ لِلۡإِنسَٰنِ خَذُولٗا ٢٩

---

30. ಸಂದೇಶವಾಹಕರು ಹೇಳುವರು: “ನನ್ನ ಪರಿಪಾಲಕನೇ, ನಿಶ್ಚಯವಾಗಿಯೂ ನನ್ನ ಸಮುದಾಯವು ಈ ಕುರ್‌ಆನನ್ನು ತೊರೆದು ಬಿಟ್ಟಿದೆ.”

وَقَالَ ٱلرَّسُولُ يَٰرَبِّ إِنَّ قَوۡمِي ٱتَّخَذُواْ هَٰذَا
ٱلۡقُرۡءَانَ مَهۡجُورٗا ٣٠

---

31. ಈ ರೀತಿ ನಾವುಎಲ್ಲಾ ಸಂದೇಶವಾಹಕರಿಗೂ ಕೆಲವು ಅಪರಾಧಿಗಳನ್ನು ಶತ್ರುಗಳಾಗಿ ಮಾಡಿದ್ದೇವೆ. ಸನ್ಮಾರ್ಗ ತೋರಿಸಲು ಮತ್ತು ಸಹಾಯ ಮಾಡಲು ನಿಮ್ಮ ಪರಿಪಾಲಕನೇ (ಅಲ್ಲಾಹನೇ) ಸಾಕು!

وَكَذَٰلِكَ جَعَلۡنَا لِكُلِّ نَبِيٍّ عَدُوّٗا مِّنَ ٱلۡمُجۡرِمِينَۗ
وَكَفَىٰ بِرَبِّكَ هَادِيٗا وَنَصِيرٗا ٣١

---

32. ಸತ್ಯನಿಷೇಧಿಗಳು ಕೇಳಿದರು: “ಕುರ್‌ಆನನ್ನು ಒಮ್ಮೆಲೇ ಸಂಪೂರ್ಣವಾಗಿ ಏಕೆ ಇಳಿಸಲಾಗಿಲ್ಲ?” ನಾವು ಈ ರೀತಿಯಲ್ಲಿ (ಹಂತ ಹಂತವಾಗಿ ಇಳಿಸಿದ್ದು ಏಕೆಂದರೆ) ಅದರ ಮೂಲಕ ನಿಮ್ಮ ಹೃದಯವನ್ನು ದೃಢವಾಗಿ ನಿಲ್ಲಿಸಲು. ನಾವು ಅದನ್ನು ಸ್ವಲ್ಪ ಸ್ವಲ್ಪವಾಗಿಯೇ ಪಠಿಸಿಕೊಡುತ್ತೇವೆ.

وَقَالَ ٱلَّذِينَ كَفَرُواْ لَوۡلَا نُزِّلَ عَلَيۡهِ ٱلۡقُرۡءَانُ
جُمۡلَةٗ وَٰحِدَةٗۚ كَذَٰلِكَ لِنُثَبِّتَ بِهِۦ فُؤَادَكَۖ
وَرَتَّلۡنَٰهُ تَرۡتِيلٗا ٣٢

---

33. ಅವರು ನಿಮ್ಮ ಬಳಿಗೆ ಯಾವುದೇ ಉದಾಹರಣೆಯನ್ನು ತಂದರೂ, ನಾವು ಅದರ ನಿಜವಾದ ಉತ್ತರವನ್ನು ಮತ್ತು ಅತ್ಯುತ್ತಮ ವಿವರಣೆಯನ್ನು ಖಂಡಿತ ತರುವೆವು.[1]

وَلَا يَأۡتُونَكَ بِمَثَلٍ إِلَّا جِئۡنَٰكَ بِٱلۡحَقِّ وَأَحۡسَنَ
تَفۡسِيرًا ٣٣

---

34. ಯಾರನ್ನು ಮುಖಗಳ ಮೇಲೆ ನರಕಕ್ಕೆ ಒಟ್ಟುಗೂಡಿಸಲಾಗುತ್ತದೋ ಅವರೇ ಅತಿ ನಿಕೃಷ್ಟ ಸ್ಥಳದಲ್ಲಿರುವವರು ಮತ್ತು ಅತ್ಯಧಿಕ ದಾರಿತಪ್ಪಿದವರು.

ٱلَّذِينَ يُحۡشَرُونَ عَلَىٰ وُجُوهِهِمۡ إِلَىٰ جَهَنَّمَ
أُوْلَٰٓئِكَ شَرّٞ مَّكَانٗا وَأَضَلُّ سَبِيلٗا ٣٤

---

[1] ಕುರ್‌ಆನನ್ನು ಹಂತ ಹಂತವಾಗಿ ಇಳಿಸಿರುವುದರ ಹಿಂದಿರುವ ಇನ್ನೊಂದು ಜಾಣ್ಮೆಯೇನೆಂದರೆ, ಸತ್ಯನಿಷೇಧಿಗಳು ಯಾವುದೇ ತರ್ಕದೊಂದಿಗೆ ಬಂದರೂ ಅದಕ್ಕೆ ಕುರ್‌ಆನಿನ ಮೂಲಕವೇ ಸೂಕ್ತ ಮತ್ತು ಸ್ಪಷ್ಟ ಉತ್ತರವನ್ನು ನೀಡಲಾಗುತ್ತದೆ.

35. ನಾವು ಮೂಸಾರಿಗೆ ಗ್ರಂಥವನ್ನು ನೀಡಿದೆವು ಮತ್ತು ಅವರ ಸಹೋದರ ಹಾರೂನರನ್ನು ಅವರ ಸಹಾಯಕರನ್ನಾಗಿ ಮಾಡಿದೆವು.

وَلَقَدْ ءَاتَيْنَا مُوسَى ٱلْكِتَٰبَ وَجَعَلْنَا مَعَهُۥٓ أَخَاهُ هَٰرُونَ وَزِيرًا ﴿٣٥﴾

36. ನಂತರ ನಾವು ಹೇಳಿದೆವು: "ನಮ್ಮ ವಚನಗಳನ್ನು ನಿಷೇಧಿಸಿದ ಜನರ ಬಳಿಗೆ ಹೋಗಿರಿ." ನಂತರ ನಾವು ಅವರನ್ನು ಸಂಪೂರ್ಣ ನಾಶ ಮಾಡಿದೆವು.

فَقُلْنَا ٱذْهَبَآ إِلَى ٱلْقَوْمِ ٱلَّذِينَ كَذَّبُوا۟ بِـَٔايَٰتِنَا فَدَمَّرْنَٰهُمْ تَدْمِيرًا ﴿٣٦﴾

37. ನೂಹರ ಜನರನ್ನು ಕೂಡ. ಅವರು ಸಂದೇಶವಾಹಕರನ್ನು ನಿಷೇಧಿಸಿದಾಗ ನಾವು ಅವರನ್ನು ಮುಳುಗಿಸಿ ನಾಶ ಮಾಡಿದೆವು ಮತ್ತು ಅವರನ್ನು ಜನರಿಗೆ ದೃಷ್ಟಾಂತವನ್ನಾಗಿ ಮಾಡಿದೆವು. ನಾವು ಅಕ್ರಮಿಗಳಿಗೆ ಯಾತನಾಮಯ ಶಿಕ್ಷೆಯನ್ನು ಸಿದ್ಧಗೊಳಿಸಿದ್ದೇವೆ.

وَقَوْمَ نُوحٍ لَّمَّا كَذَّبُوا۟ ٱلرُّسُلَ أَغْرَقْنَٰهُمْ وَجَعَلْنَٰهُمْ لِلنَّاسِ ءَايَةًۖ وَأَعْتَدْنَا لِلظَّٰلِمِينَ عَذَابًا أَلِيمًا ﴿٣٧﴾

38. ಆದ್ ಗೋತ್ರವನ್ನು, ಸಮೂದ್ ಗೋತ್ರವನ್ನು, ಬಾವಿಗಳ ಜನರನ್ನು[1] ಮತ್ತು ಅದರ ಮಧ್ಯೆ ಬದುಕಿದ ಅನೇಕ ತಲೆಮಾರುಗಳನ್ನು ಕೂಡ (ನಾಶ ಮಾಡಿದೆವು).

وَعَادًا وَثَمُودَا۟ وَأَصْحَٰبَ ٱلرَّسِّ وَقُرُونًۢا بَيْنَ ذَٰلِكَ كَثِيرًا ﴿٣٨﴾

39. ನಾವು ಅವರೆಲ್ಲರಿಗೂ ಉದಾಹರಣೆಗಳನ್ನು ವಿವರಿಸಿಕೊಟ್ಟಿದ್ದೆವು. ನಂತರ ಅವರೆಲ್ಲರನ್ನೂ ನಾವು ಸರ್ವನಾಶ ಮಾಡಿದೆವು.

وَكُلًّا ضَرَبْنَا لَهُ ٱلْأَمْثَٰلَۖ وَكُلًّا تَبَّرْنَا تَتْبِيرًا ﴿٣٩﴾

40. ಕೆಟ್ಟ ಮಳೆಯನ್ನು ಸುರಿಸಲಾದ ಆ ಊರಿನ ಮೂಲಕ ಇವರು (ಮಕ್ಕಾದ ಬಹುದೇವಾರಾಧಕರು) ಹಾದುಹೋಗುತ್ತಿದ್ದಾರೆ.[2] ಆದರೂ ಅವರು ಅದನ್ನು ನೋಡುವುದಿಲ್ಲವೇ? ವಾಸ್ತವವೇನೆಂದರೆ, ಇವರಿಗೆ ಪುನರುತ್ಥಾನದಲ್ಲಿ ಭರವಸೆಯೇ ಇಲ್ಲ.

وَلَقَدْ أَتَوْا۟ عَلَى ٱلْقَرْيَةِ ٱلَّتِىٓ أُمْطِرَتْ مَطَرَ ٱلسَّوْءِۚ أَفَلَمْ يَكُونُوا۟ يَرَوْنَهَاۚ بَلْ كَانُوا۟ لَا يَرْجُونَ نُشُورًا ﴿٤٠﴾

41. ಅವರು ನಿಮ್ಮನ್ನು ಕಾಣುವಾಗ ನಿಮ್ಮನ್ನು ಒಂದು ತಮಾಷೆಯ ವಸ್ತುವನ್ನಾಗಿ ಮಾಡುತ್ತಾ ಕೇಳುತ್ತಾರೆ: "ಅಲ್ಲಾಹು ಸಂದೇಶವಾಹಕನಾಗಿ ಕಳುಹಿಸಿದ್ದು ಇವನನ್ನೋ?

وَإِذَا رَأَوْكَ إِن يَتَّخِذُونَكَ إِلَّا هُزُوًا أَهَٰذَا ٱلَّذِى بَعَثَ ٱللَّهُ رَسُولًا ﴿٤١﴾

42. ನಾವು ನಮ್ಮ ದೇವರುಗಳ ವಿಷಯದಲ್ಲಿ ಮನಸ್ಸು ಗಟ್ಟಿ ಮಾಡಿ ನಿಲ್ಲದಿರುತ್ತಿದ್ದರೆ ಇವನು ನಮ್ಮನ್ನು ಅವುಗಳಿಂದ ತಪ್ಪಿಸಿಬಿಡುತ್ತಿದ್ದನು." ಅವರು ಶಿಕ್ಷೆಯನ್ನು ನೋಡುವಾಗ ಯಾರು ಹೆಚ್ಚು ದಾರಿತಪ್ಪಿದವರೆಂದು ಸ್ಪಷ್ಟವಾಗಿ ತಿಳಿದುಕೊಳ್ಳುವರು.

إِن كَادَ لَيُضِلُّنَا عَنْ ءَالِهَتِنَا لَوْلَآ أَن صَبَرْنَا عَلَيْهَاۚ وَسَوْفَ يَعْلَمُونَ حِينَ يَرَوْنَ ٱلْعَذَابَ مَنْ أَضَلُّ سَبِيلًا ﴿٤٢﴾

[1] ಇವರು ಯಾರೆಂಬ ಬಗ್ಗೆ ವ್ಯಾಖ್ಯಾನಕಾರರಿಗೆ ಭಿನ್ನಾಭಿಪ್ರಾಯವಿದೆ. ಕೆಲವರು ಇರುವ ಸೂರ ಬುರೂಜ್‌ನಲ್ಲಿ ವಿವರಿಸಿದ ಹೊಂಡಗಳ ಜನರು ಎಂದು ಹೇಳಿದ್ದಾರೆ.

[2] ಅಂದರೆ ಪ್ರವಾದಿ ಲೂತರ (ಅವರ ಮೇಲೆ ಶಾಂತಿಯಿರಲಿ) ಜನರು ವಾಸವಾಗಿದ್ದ ಸದೂಮ್ ನಗರ.

| | | |
|---|---|---|
| 43. | ತನ್ನ ಸ್ವೇಚ್ಛೆಯನ್ನೇ ದೇವರಾಗಿ ಸ್ವೀಕರಿಸಿದವನನ್ನು[1] ನೀವು ನೋಡಿಲ್ಲವೇ? ನೀವೇನು ಅವನ ಹೊಣೆ ವಹಿಸುತ್ತೀರಾ? | أَرَءَيْتَ مَنِ ٱتَّخَذَ إِلَٰهَهُۥ هَوَىٰهُ أَفَأَنتَ تَكُونُ عَلَيْهِ وَكِيلًا ﴿٤٣﴾ |
| 44. | ಅವರಲ್ಲಿ ಹೆಚ್ಚಿನವರು ಕಿವಿಗೊಡುತ್ತಾರೆ ಮತ್ತು ಆಲೋಚಿಸುತ್ತಾರೆಂದು ನೀವು ಭಾವಿಸಿದ್ದೀರಾ? ಅವರು ಕೇವಲ ಜಾನುವಾರುಗಳಂತೆ. ಅಲ್ಲ, ಅವರು ಅವುಗಳಿಗಿಂತಲೂ ಹೆಚ್ಚು ದಾರಿತಪ್ಪಿದ್ದಾರೆ. | أَمْ تَحْسَبُ أَنَّ أَكْثَرَهُمْ يَسْمَعُونَ أَوْ يَعْقِلُونَ ۚ إِنْ هُمْ إِلَّا كَٱلْأَنْعَٰمِ بَلْ هُمْ أَضَلُّ سَبِيلًا ﴿٤٤﴾ |
| 45. | ನಿಮ್ಮ ಪರಿಪಾಲಕನು (ಅಲ್ಲಾಹು) ನೆರಳನ್ನು ಹೇಗೆ ವಿಸ್ತರಿಸುತ್ತಿದ್ದಾನೆಂದು ನೀವು ನೋಡಿಲ್ಲವೇ? ಅವನು ಇಚ್ಛಿಸುತ್ತಿದ್ದರೆ ಅದನ್ನು ನಿಶ್ಚಲಗೊಳಿಸುತ್ತಿದ್ದನು. ನಂತರ ನಾವು ಸೂರ್ಯನನ್ನು ಅದಕ್ಕೆ ಮಾರ್ಗದರ್ಶಿಯಾಗಿ ಮಾಡಿದೆವು. | أَلَمْ تَرَ إِلَىٰ رَبِّكَ كَيْفَ مَدَّ ٱلظِّلَّ وَلَوْ شَآءَ لَجَعَلَهُۥ سَاكِنًا ثُمَّ جَعَلْنَا ٱلشَّمْسَ عَلَيْهِ دَلِيلًا ﴿٤٥﴾ |
| 46. | ನಂತರ ನಾವು ಅದನ್ನು ಸ್ವಲ್ಪ ಸ್ವಲ್ಪವಾಗಿ ನಮ್ಮ ಕಡೆಗೆ ಎಳೆದೆವು. | ثُمَّ قَبَضْنَٰهُ إِلَيْنَا قَبْضًا يَسِيرًا ﴿٤٦﴾ |
| 47. | ಅವನೇ ನಿಮಗೆ ರಾತ್ರಿಯನ್ನು ಉಡುಪನ್ನಾಗಿ ಮತ್ತು ನಿದ್ದೆಯನ್ನು ವಿಶ್ರಾಂತಿಯನ್ನಾಗಿ ಮಾಡಿಕೊಟ್ಟವನು. ಅವನು ಹಗಲನ್ನು ಎಚ್ಚರವಾಗಿರುವ ಸಮಯವಾಗಿ ಮಾಡಿದನು. | وَهُوَ ٱلَّذِى جَعَلَ لَكُمُ ٱلَّيْلَ لِبَاسًا وَٱلنَّوْمَ سُبَاتًا وَجَعَلَ ٱلنَّهَارَ نُشُورًا ﴿٤٧﴾ |
| 48. | ತನ್ನ ದಯೆಗೆ (ಮಳೆಗೆ) ಮೊದಲು ಸುವಾರ್ತೆಯಾಗಿ ಗಾಳಿಗಳನ್ನು ಕಳುಹಿಸುವವನು ಅವನೇ. ನಾವು ಆಕಾಶದಿಂದ ಶುದ್ಧ ನೀರನ್ನು ಇಳಿಸುತ್ತೇವೆ. | وَهُوَ ٱلَّذِىٓ أَرْسَلَ ٱلرِّيَٰحَ بُشْرًۢا بَيْنَ يَدَىْ رَحْمَتِهِۦ ۚ وَأَنزَلْنَا مِنَ ٱلسَّمَآءِ مَآءً طَهُورًا ﴿٤٨﴾ |
| 49. | ನಿರ್ಜೀವ ಸ್ಥಿತಿಯಲ್ಲಿರುವ ಊರಿಗೆ ಅದರ ಮೂಲಕ ಜೀವ ನೀಡಲು. ನಾವು ಅದನ್ನು ನಮ್ಮ ಸೃಷ್ಟಿಗಳಲ್ಲಿ ಸೇರಿದ ಅಸಂಖ್ಯ ಜಾನುವಾರುಗಳು ಮತ್ತು ಮನುಷ್ಯರಿಗೆ ಕುಡಿಸುತ್ತೇವೆ. | لِّنُحْـِۧىَ بِهِۦ بَلْدَةً مَّيْتًا وَنُسْقِيَهُۥ مِمَّا خَلَقْنَآ أَنْعَٰمًا وَأَنَاسِىَّ كَثِيرًا ﴿٤٩﴾ |
| 50. | ಅವರು ಉಪದೇಶ ಪಡೆಯಲೆಂದು ನಾವು ಅದನ್ನು (ಮಳೆನೀರನ್ನು) ಅವರ ಮಧ್ಯೆ ವಿತರಣೆ ಮಾಡುತ್ತೇವೆ. ಆದರೆ ಜನರಲ್ಲಿ ಹೆಚ್ಚಿನವರು ನಿಷೇಧಿಸಲು ಮಾತ್ರ ಮುಂದಾಗುತ್ತಾರೆ. | وَلَقَدْ صَرَّفْنَٰهُ بَيْنَهُمْ لِيَذَّكَّرُوا۟ فَأَبَىٰٓ أَكْثَرُ ٱلنَّاسِ إِلَّا كُفُورًا ﴿٥٠﴾ |
| 51. | ನಾವು ಇಚ್ಛಿಸುತ್ತಿದ್ದರೆ ಎಲ್ಲ ಊರುಗಳಿಗೂ ಒಬ್ಬೊಬ್ಬ ಮುನ್ನೆಚ್ಚರಿಕೆಗಾರನನ್ನು ಕಳುಹಿಸುತ್ತಿದ್ದೆವು. | وَلَوْ شِئْنَا لَبَعَثْنَا فِى كُلِّ قَرْيَةٍ نَّذِيرًا ﴿٥١﴾ |
| 52. | ಆದ್ದರಿಂದ ನೀವು ಸತ್ಯನಿಷೇಧಿಗಳನ್ನು ಅನುಸರಿಸಬೇಡಿ. ಇದರ (ಕುರ್‌ಆನ್‌ನ) ಮೂಲಕ ಅವರ ವಿರುದ್ಧ ಮಹಾ ಹೋರಾಟ ಮಾಡಿರಿ. | فَلَا تُطِعِ ٱلْكَٰفِرِينَ وَجَٰهِدْهُم بِهِۦ جِهَادًا كَبِيرًا ﴿٥٢﴾ |

[1] ಅಂದರೆ ತನಗೆ ಸರಿಯೆಂದು ಕಾಣುವುದನ್ನು ದೇವರು ಮತ್ತು ಧರ್ಮವಾಗಿ ಸ್ವೀಕರಿಸಿದವನನ್ನು.

53. ಅವನೇ ಎರಡು ಸಮುದ್ರಗಳನ್ನು ಬೆರೆಯಲು ಬಿಟ್ಟವನು. ಒಂದರಲ್ಲಿ ತಾಜಾ ಸಿಹಿನೀರು ಮತ್ತು ಇನ್ನೊಂದರಲ್ಲಿ ಕಹಿ ಉಪ್ಪು ನೀರು. ಅವನು ಅವೆರಡರ ಮಧ್ಯೆ ಒಂದು ಪರದೆಯನ್ನು ಮತ್ತು ಬಲಿಷ್ಠ ತಡೆಯನ್ನು ನಿರ್ಮಿಸಿದ್ದಾನೆ.

وَهُوَ ٱلَّذِي مَرَجَ ٱلْبَحْرَيْنِ هَٰذَا عَذْبٌ فُرَاتٌ
وَهَٰذَا مِلْحٌ أُجَاجٌ وَجَعَلَ بَيْنَهُمَا بَرْزَخًا
وَحِجْرًا مَّحْجُورًا ٥٣

54. ಅವನೇ ಮನುಷ್ಯನನ್ನು ನೀರಿನಿಂದ ಸೃಷ್ಟಿಸಿದವನು. ನಂತರ ಅವನಿಗೆ ವಂಶಾವಳಿಯನ್ನು ಮತ್ತು ವೈವಾಹಿಕ ಸಂಬಂಧಿಗಳನ್ನು ಮಾಡಿಕೊಟ್ಟನು. ನಿಮ್ಮ ಪರಿಪಾಲಕನು (ಅಲ್ಲಾಹು) ಸರ್ವಶಕ್ತನಾಗಿದ್ದಾನೆ.

وَهُوَ ٱلَّذِي خَلَقَ مِنَ ٱلْمَآءِ بَشَرًا فَجَعَلَهُۥ نَسَبًا
وَصِهْرًا ۗ وَكَانَ رَبُّكَ قَدِيرًا ٥٤

55. ಅವರು ಅಲ್ಲಾಹನನ್ನು ಬಿಟ್ಟು ಅವರಿಗೆ ಉಪಕಾರ ಅಥವಾ ತೊಂದರೆ ಮಾಡದವರನ್ನು ಆರಾಧಿಸುತ್ತಿದ್ದಾರೆ. ಸತ್ಯನಿಷೇಧಿಯು ತನ್ನ ಪರಿಪಾಲಕನ ವಿರುದ್ಧ (ಶೈತಾನನಿಗೆ) ಬೆಂಬಲಿಗನಾಗಿದ್ದಾನೆ.

وَيَعْبُدُونَ مِن دُونِ ٱللَّهِ مَا لَا يَنفَعُهُمْ وَلَا
يَضُرُّهُمْ ۗ وَكَانَ ٱلْكَافِرُ عَلَىٰ رَبِّهِۦ ظَهِيرًا ٥٥

56. (ಪ್ರವಾದಿಯವರೇ) ನಾವು ನಿಮ್ಮನ್ನು ಸುವಾರ್ತೆ ತಿಳಿಸುವವರಾಗಿ ಮತ್ತು ಮುನ್ನೆಚ್ಚರಿಕೆ ನೀಡುವವರಾಗಿಯೇ ಕಳುಹಿಸಿದ್ದೇವೆ.

وَمَآ أَرْسَلْنَٰكَ إِلَّا مُبَشِّرًا وَنَذِيرًا ٥٦

57. ಹೇಳಿರಿ: "ನಾನು ಇದಕ್ಕಾಗಿ ನಿಮ್ಮಿಂದ ಯಾವುದೇ ಪ್ರತಿಫಲವನ್ನು ಕೇಳುವುದಿಲ್ಲ. ಆದರೆ ಯಾರು ತನ್ನ ಪರಿಪಾಲಕನ (ಅಲ್ಲಾಹನ) ಕಡೆಗೆ ಮಾರ್ಗವನ್ನು ಸ್ವೀಕರಿಸಲು ಇಚ್ಛಿಸುತ್ತಾನೋ (ಅವನು ಅದನ್ನು ಸ್ವೀಕರಿಸಬೇಕು ಎಂಬುದರ) ಹೊರತು."

قُلْ مَآ أَسْـَٔلُكُمْ عَلَيْهِ مِنْ أَجْرٍ إِلَّا مَن شَآءَ
أَن يَتَّخِذَ إِلَىٰ رَبِّهِۦ سَبِيلًا ٥٧

58. ಎಂದಿಗೂ ಸಾಯದೆ ನಿರಂತರ ಬದುಕಿರುವವನಲ್ಲಿ (ಅಲ್ಲಾಹನಲ್ಲಿ) ಭರವಸೆಯಿಡಿ. ಅವನ ಸ್ತುತಿಯೊಂದಿಗೆ ಅವನ ಪರಿಶುದ್ಧಿಯನ್ನು ಕೊಂಡಾಡಿರಿ. ಅವನ ದಾಸರು ಮಾಡುವ ಪಾಪಗಳನ್ನು ಸೂಕ್ಷ್ಮವಾಗಿ ತಿಳಿಯಲು ಅವನೇ ಸಾಕು.

وَتَوَكَّلْ عَلَى ٱلْحَيِّ ٱلَّذِي لَا يَمُوتُ وَسَبِّحْ
بِحَمْدِهِۦ ۚ وَكَفَىٰ بِهِۦ بِذُنُوبِ عِبَادِهِۦ خَبِيرًا ٥٨

59. ಅವನು ಭೂಮ್ಯಾಕಾಶಗಳನ್ನು ಮತ್ತು ಅವುಗಳ ನಡುವೆಯಿರುವ ಎಲ್ಲಾ ವಸ್ತುಗಳನ್ನು ಆರು ದಿನಗಳಲ್ಲಿ ಸೃಷ್ಟಿಸಿದವನು. ನಂತರ ಅವನು ಸಿಂಹಾಸನದಲ್ಲಿ ಆರೂಢನಾದನು. ಅವನು ಪರಮ ದಯಾಳು. ನೀವು ಅವನ ಬಗ್ಗೆ ಸೂಕ್ಷ್ಮವಾಗಿ ತಿಳಿದವನೊಡನೆ (ಪ್ರವಾದಿಯೊಡನೆ) ಕೇಳಿರಿ.

ٱلَّذِي خَلَقَ ٱلسَّمَٰوَٰتِ وَٱلْأَرْضَ وَمَا بَيْنَهُمَا فِي
سِتَّةِ أَيَّامٍ ثُمَّ ٱسْتَوَىٰ عَلَى ٱلْعَرْشِ ۚ ٱلرَّحْمَٰنُ
فَسْـَٔلْ بِهِۦ خَبِيرًا ٥٩

60. "ಪರಮ ದಯಾಳುವಿಗೆ (ಅಲ್ಲಾಹನಿಗೆ) ಸಾಷ್ಟಾಂಗ ಮಾಡಿರಿ" ಎಂದು ಅವರೊಡನೆ ಹೇಳಲಾದರೆ ಅವರು ಕೇಳುತ್ತಾರೆ: "ಪರಮ ದಯಾಳು ಎಂದರೇನು?[1] ನೀನು ಆಜ್ಞಾಪಿಸುವವನಿಗೆ ನಾವು ಸಾಷ್ಟಾಂಗ ಮಾಡಬೇಕೇ?" ಇದು ಅವರಿಗೆ ದ್ವೇಷವನ್ನು

وَإِذَا قِيلَ لَهُمُ ٱسْجُدُوا۟ لِلرَّحْمَٰنِ قَالُوا۟ وَمَا
ٱلرَّحْمَٰنُ أَنَسْجُدُ لِمَا تَأْمُرُنَا وَزَادَهُمْ نُفُورًا ٦٠

[1] ಮಕ್ಕಾದ ಸತ್ಯನಿಷೇಧಿಗಳು ಅಲ್ಲಾಹನನ್ನು ರಹ್ಮಾನ್ (ಪರಮ ದಯಾಳು) ಎಂದು ಒಪ್ಪಿಕೊಳ್ಳುತ್ತಿರಲಿಲ್ಲ.

ಇನ್ನಷ್ಟು ಹೆಚ್ಚಿಸಿಬಿಟ್ಟಿತು.

---

61. ಆಕಾಶದಲ್ಲಿ ನಕ್ಷತ್ರಪುಂಜಗಳನ್ನು ಸ್ಥಾಪಿಸಿದವನು (ಅಲ್ಲಾಹು) ಸಮೃದ್ಧಪೂರ್ಣನು. ಅವನು ಅದರಲ್ಲಿ ಒಂದು ದೀಪವನ್ನು (ಸೂರ್ಯನನ್ನು) ಮತ್ತು ಬೆಳಗುವ ಚಂದ್ರನನ್ನು ಉಂಟುಮಾಡಿದನು.

تَبَارَكَ ٱلَّذِى جَعَلَ فِى ٱلسَّمَآءِ بُرُوجًا وَجَعَلَ فِيهَا سِرَٰجًا وَقَمَرًا مُّنِيرًا ﴿٦١﴾

---

62. ಅವನೇ ರಾತ್ರಿ-ಹಗಲುಗಳನ್ನು ಒಂದರ ಹಿಂದೆ ಇನ್ನೊಂದು ಬರುವಂತೆ ಮಾಡಿದವನು. ಉಪದೇಶ ಸ್ವೀಕರಿಸಲು ಬಯಸುವವರಿಗೆ ಅಥವಾ ಕೃತಜ್ಞರಾಗಲು ಬಯಸುವವರಿಗೆ (ಒಂದು ದೃಷ್ಟಾಂತವೆಂಬಂತೆ).

وَهُوَ ٱلَّذِى جَعَلَ ٱلَّيْلَ وَٱلنَّهَارَ خِلْفَةً لِّمَنْ أَرَادَ أَن يَذَّكَّرَ أَوْ أَرَادَ شُكُورًا ﴿٦٢﴾

---

63. ಪರಮ ದಯಾಳುವಿನ (ಅಲ್ಲಾಹನ) ದಾಸರು ಭೂಮಿಯಲ್ಲಿ ವಿನಯದಿಂದ ನಡೆಯುವವರಾಗಿದ್ದಾರೆ. ಅವಿವೇಕಿಗಳು ಅವರೊಡನೆ ಮಾತನಾಡಿದರೆ ಅವರು ಶಾಂತಿ-ಸಮಾಧಾನದ ಮಾತುಗಳನ್ನು ಹೇಳುತ್ತಾರೆ.[1]

وَعِبَادُ ٱلرَّحْمَٰنِ ٱلَّذِينَ يَمْشُونَ عَلَى ٱلْأَرْضِ هَوْنًا وَإِذَا خَاطَبَهُمُ ٱلْجَٰهِلُونَ قَالُوا۟ سَلَٰمًا ﴿٦٣﴾

---

64. ಅವರು (ಅಲ್ಲಾಹನ ದಾಸರು) ಯಾರೆಂದರೆ, ತಮ್ಮ ಪರಿಪಾಲಕನಿಗೆ (ಅಲ್ಲಾಹನಿಗೆ) ಸಾಷ್ಟಾಂಗ ಮಾಡುತ್ತಾ ಮತ್ತು ನಿಂತು ನಮಾಝ್ ಮಾಡುತ್ತಾ ರಾತ್ರಿಯನ್ನು ಕಳೆಯುವವರು.

وَٱلَّذِينَ يَبِيتُونَ لِرَبِّهِمْ سُجَّدًا وَقِيَٰمًا ﴿٦٤﴾

---

65. ಅವರು ಹೇಳುತ್ತಾರೆ: “ನಮ್ಮ ಪರಿಪಾಲಕನೇ! ನಮ್ಮಿಂದ ನರಕ ಶಿಕ್ಷೆಯನ್ನು ದೂರೀಕರಿಸು. ನಿಜಕ್ಕೂ ಅದರ ಶಿಕ್ಷೆಯು ಸದಾ ಅಂಟಿಕೊಂಡಿರುತ್ತದೆ.

وَٱلَّذِينَ يَقُولُونَ رَبَّنَا ٱصْرِفْ عَنَّا عَذَابَ جَهَنَّمَ ۖ إِنَّ عَذَابَهَا كَانَ غَرَامًا ﴿٦٥﴾

---

66. ನಿಶ್ಚಯವಾಗಿಯೂ ಅದು ಬಹಳ ನಿಕೃಷ್ಟ ವಾಸಸ್ಥಳ ಮತ್ತು ವಾಸ್ತವ್ಯವಾಗಿದೆ.”

إِنَّهَا سَآءَتْ مُسْتَقَرًّا وَمُقَامًا ﴿٦٦﴾

---

67. ಅವರು ಖರ್ಚು ಮಾಡುವಾಗ ಅತಿಯಾಗಿ ಖರ್ಚು ಮಾಡುವುದಿಲ್ಲ ಮತ್ತು ಜಿಪುಣತನ ತೋರುವುದೂ ಇಲ್ಲ. ಬದಲಿಗೆ, ಅವೆರಡರ ನಡುವಿನ ಮಧ್ಯಮ ಮಾರ್ಗವನ್ನು ಸ್ವೀಕರಿಸುತ್ತಾರೆ.

وَٱلَّذِينَ إِذَآ أَنفَقُوا۟ لَمْ يُسْرِفُوا۟ وَلَمْ يَقْتُرُوا۟ وَكَانَ بَيْنَ ذَٰلِكَ قَوَامًا ﴿٦٧﴾

---

68. ಅವರು ಅಲ್ಲಾಹನ ಜೊತೆಗೆ ಬೇರೆ ದೇವರುಗಳನ್ನು ಕರೆದು ಪ್ರಾರ್ಥಿಸುವುದಿಲ್ಲ, ಕಾನೂನುಬದ್ಧ ರೀತಿಯಲ್ಲೇ ಹೊರತು ಅಲ್ಲಾಹು (ಕೊಲ್ಲುವುದನ್ನು) ನಿಷೇಧಿಸಿದ ಜೀವವನ್ನು ಕೊಲ್ಲುವುದಿಲ್ಲ ಮತ್ತು ವ್ಯಭಿಚಾರ ಮಾಡುವುದಿಲ್ಲ. ಯಾರು ಇವುಗಳನ್ನು ಮಾಡುತ್ತಾನೋ

وَٱلَّذِينَ لَا يَدْعُونَ مَعَ ٱللَّهِ إِلَٰهًا ءَاخَرَ وَلَا يَقْتُلُونَ ٱلنَّفْسَ ٱلَّتِى حَرَّمَ ٱللَّهُ إِلَّا بِٱلْحَقِّ وَلَا يَزْنُونَ ۚ وَمَن يَفْعَلْ ذَٰلِكَ يَلْقَ أَثَامًا ﴿٦٨﴾

---

[1] ಅಂದರೆ ಅವರು ಅವಿವೇಕಿಗಳೊಡನೆ ತರ್ಕ ಅಥವಾ ವಾಗ್ವಾದಕ್ಕೆ ಇಳಿಯುವುದಿಲ್ಲ. ಬದಲಿಗೆ, ಸಭ್ಯವಾದ ರೀತಿಯಲ್ಲಿ ಅವರನ್ನು ನಿರ್ಲಕ್ಷಿಸುತ್ತಾ ಸಾಗಿ ಬಿಡುತ್ತಾರೆ.

ಅವನು ಶಿಕ್ಷೆಯನ್ನು ಪಡೆಯುವನು.

---

69. ಪುನರುತ್ಥಾನ ದಿನದಂದು ಅವನಿಗೆ ಇಮ್ಮಡಿ ಶಿಕ್ಷೆ ನೀಡಲಾಗುವುದು. ಅವನು ಅವಮಾನವನ್ನು ಸಹಿಸುತ್ತಾ ಸದಾಕಾಲ ಅದರಲ್ಲಿ ವಾಸಿಸುವನು.

يُضَٰعَفۡ لَهُ ٱلۡعَذَابُ يَوۡمَ ٱلۡقِيَٰمَةِ وَيَخۡلُدۡ فِيهِۦ
مُهَانًا ﴿٦٩﴾

---

70. ಆದರೆ ಪಶ್ಚಾತ್ತಾಪಪಟ್ಟವರು, ಸತ್ಯವಿಶ್ವಾಸಿಗಳಾದವರು ಮತ್ತು ಸತ್ಕರ್ಮವೆಸಗಿದವರು ಇದಕ್ಕೆ ಹೊರತಾಗಿದ್ದಾರೆ. ಅಲ್ಲಾಹು ಅವರ ದುಷ್ಕೃತ್ಯಗಳನ್ನು ಸತ್ಕರ್ಮಗಳಾಗಿ ಬದಲಾಯಿಸುವನು. ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

إِلَّا مَن تَابَ وَءَامَنَ وَعَمِلَ عَمَلٗا صَٰلِحٗا
فَأُوْلَٰٓئِكَ يُبَدِّلُ ٱللَّهُ سَيِّـَٔاتِهِمۡ حَسَنَٰتٖۗ وَكَانَ
ٱللَّهُ غَفُورٗا رَّحِيمٗا ﴿٧٠﴾

---

71. ಯಾರು ಪಶ್ಚಾತ್ತಾಪಪಟ್ಟು ಸತ್ಕರ್ಮವೆಸಗುತ್ತಾನೋ ಅವನು ಅಲ್ಲಾಹನ ಕಡೆಗೆ ಪ್ರಾಮಾಣಿಕವಾಗಿ ಮರಳಿದ್ದಾನೆ.

وَمَن تَابَ وَعَمِلَ صَٰلِحٗا فَإِنَّهُۥ يَتُوبُ إِلَى ٱللَّهِ
مَتَابٗا ﴿٧١﴾

---

72. ಅವರು ಸುಳ್ಳು ಸಾಕ್ಷ್ಯ ಹೇಳದವರು ಮತ್ತು ಅನಗತ್ಯ ಸಂಗತಿಗಳ ಬಳಿಯಿಂದ ನಡೆಯಬೇಕಾಗಿ ಬಂದರೆ ಸಭ್ಯತೆಯಿಂದ ನಡೆಯುವವರಾಗಿದ್ದಾರೆ.

وَٱلَّذِينَ لَا يَشۡهَدُونَ ٱلزُّورَ وَإِذَا مَرُّواْ بِٱللَّغۡوِ
مَرُّواْ كِرَامٗا ﴿٧٢﴾

---

73. ಅವರಿಗೆ ಅವರ ಪರಿಪಾಲಕನ (ಅಲ್ಲಾಹನ) ವಚನಗಳ ಮೂಲಕ ಉಪದೇಶ ನೀಡಲಾದರೆ ಅವರು ಕಿವುಡರು ಮತ್ತು ಕುರುಡರಾಗಿ ಬಿಡುವುದಿಲ್ಲ.

وَٱلَّذِينَ إِذَا ذُكِّرُواْ بِـَٔايَٰتِ رَبِّهِمۡ لَمۡ يَخِرُّواْ
عَلَيۡهَا صُمّٗا وَعُمۡيَانٗا ﴿٧٣﴾

---

74. ಅವರು ಪ್ರಾರ್ಥಿಸುತ್ತಾರೆ: “ನಮ್ಮ ಪರಿಪಾಲಕನೇ! ನಮ್ಮ ಪತ್ನಿಯರಲ್ಲಿ ಮತ್ತು ನಮ್ಮ ಮಕ್ಕಳಲ್ಲಿ ನಮಗೆ ಕಣ್ತಂಪನ್ನು ನೀಡು. ದೇವಭಯವುಳ್ಳವರಿಗೆ ನಮ್ಮನ್ನು ಮುಂದಾಳುಗಳನ್ನಾಗಿ ಮಾಡು.”

وَٱلَّذِينَ يَقُولُونَ رَبَّنَا هَبۡ لَنَا مِنۡ
أَزۡوَٰجِنَا وَذُرِّيَّٰتِنَا قُرَّةَ أَعۡيُنٖ وَٱجۡعَلۡنَا
لِلۡمُتَّقِينَ إِمَامًا ﴿٧٤﴾

---

75. ಅವರು ತಾಳ್ಮೆ ತೋರಿದ್ದಕ್ಕೆ ಪ್ರತಿಫಲವಾಗಿ ಅವರಿಗೆ ಸ್ವರ್ಗದ ಉನ್ನತ ಮಹಲುಗಳನ್ನು ನೀಡಲಾಗುವುದು. ಅಲ್ಲಿ ಅವರು ಅಭಿವಂದನೆಗಳನ್ನು ಮತ್ತು ಶಾಂತಿಯ ಹಾರೈಕೆಗಳನ್ನು ಪಡೆಯುವರು.

أُوْلَٰٓئِكَ يُجۡزَوۡنَ ٱلۡغُرۡفَةَ بِمَا صَبَرُواْ وَيُلَقَّوۡنَ
فِيهَا تَحِيَّةٗ وَسَلَٰمًا ﴿٧٥﴾

---

76. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಆ ವಾಸಸ್ಥಳ ಮತ್ತು ಸ್ಥಾನಮಾನವು ಬಹಳ ಉತ್ತಮವಾಗಿದೆ.

خَٰلِدِينَ فِيهَاۚ حَسُنَتۡ مُسۡتَقَرّٗا وَمُقَامٗا ﴿٧٦﴾

---

77. ಹೇಳಿರಿ: “ನಿಮ್ಮ ಪ್ರಾರ್ಥನೆಗಳು ಇಲ್ಲದಿರುತ್ತಿದ್ದರೆ ನನ್ನ ಪರಿಪಾಲಕನು (ಅಲ್ಲಾಹು) ನಿಮ್ಮನ್ನು ಪರಿಗಣಿಸುತ್ತಲೇ ಇರಲಿಲ್ಲ.” ಆದರೆ ನೀವು ನಿಷೇಧಿಸಿದ್ದೀರಿ. ಆದ್ದರಿಂದ ಅದಕ್ಕಿರುವ ಶಿಕ್ಷೆಯು ಸದ್ಯವೇ ನಿಮ್ಮನ್ನು ಅಂಟಿಕೊಳ್ಳಲಿದೆ.

قُلۡ مَا يَعۡبَؤُاْ بِكُمۡ رَبِّي لَوۡلَا دُعَآؤُكُمۡۖ فَقَدۡ
كَذَّبۡتُمۡ فَسَوۡفَ يَكُونُ لِزَامَۢا ﴿٧٧﴾

# 26. ಅಶ್ಶುಅರಾಅ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ತ್ವಾ ಸೀನ್ ಮೀಮ್. | طسٓمٓ ١ |
| 2. | ಇವು ಸ್ಪಷ್ಟ ಗ್ರಂಥದ ವಚನಗಳಾಗಿವೆ. | تِلۡكَ ءَايَٰتُ ٱلۡكِتَٰبِ ٱلۡمُبِينِ ٢ |
| 3. | ಅವರು ಸತ್ಯವಿಶ್ವಾಸಿಗಳಾಗದ ಕಾರಣ ಬಹುಶಃ ನೀವು ನಿಮ್ಮ ಪ್ರಾಣವನ್ನೇ ಕಳಕೊಳ್ಳುತ್ತಿದ್ದೀರಿ. | لَعَلَّكَ بَٰخِعٞ نَّفۡسَكَ أَلَّا يَكُونُواْ مُؤۡمِنِينَ ٣ |
| 4. | ನಾವು ಇಚ್ಛಿಸಿದರೆ ಅವರಿಗೆ ಆಕಾಶದಿಂದ ಒಂದು ದೃಷ್ಟಾಂತವನ್ನು ಇಳಿಸಿಕೊಡುವೆವು. ಅದರ ಮುಂದೆ ಅವರ ಕೊರಳುಗಳು ವಿನಮ್ರವಾಗುವುವು. | إِن نَّشَأۡ نُنَزِّلۡ عَلَيۡهِم مِّنَ ٱلسَّمَآءِ ءَايَةٗ فَظَلَّتۡ أَعۡنَٰقُهُمۡ لَهَا خَٰضِعِينَ ٤ |
| 5. | ಅವರ ಬಳಿಗೆ ಪರಮ ದಯಾಮಯನ (ಅಲ್ಲಾಹನ) ಕಡೆಯಿಂದ ಯಾವುದೇ ಹೊಸ ಉಪದೇಶವು ಬಂದಾಗಲೂ ಅವರು ಅದರಿಂದ ವಿಮುಖರಾಗುತ್ತಲೇ ಇದ್ದರು. | وَمَا يَأۡتِيهِم مِّن ذِكۡرٖ مِّنَ ٱلرَّحۡمَٰنِ مُحۡدَثٍ إِلَّا كَانُواْ عَنۡهُ مُعۡرِضِينَ ٥ |
| 6. | ಅವರು ನಿಷೇಧಿಸಿದರು. ಆದ್ದರಿಂದ ಅವರು ಏನನ್ನು ತಮಾಷೆ ಮಾಡುತ್ತಿದ್ದರೋ ಅದರ ಸಮಾಚಾರವು ಸದ್ಯವೇ ಅವರ ಬಳಿಗೆ ಬರುವುದು. | فَقَدۡ كَذَّبُواْ فَسَيَأۡتِيهِمۡ أَنۢبَٰٓؤُاْ مَا كَانُواْ بِهِۦ يَسۡتَهۡزِءُونَ ٦ |
| 7. | ಅವರು ಭೂಮಿಯನ್ನು ನೋಡುವುದಿಲ್ಲವೇ? ನಾವು ಅದರಲ್ಲಿ ಎಲ್ಲಾ ವಿಧಗಳ ಉತ್ತಮ ಸಸ್ಯವರ್ಗಗಳಿಂದ ಎಷ್ಟೆಲ್ಲಾ ಬೆಳೆಸಿದ್ದೇವೆಂದು. | أَوَلَمۡ يَرَوۡاْ إِلَى ٱلۡأَرۡضِ كَمۡ أَنۢبَتۡنَا فِيهَا مِن كُلِّ زَوۡجٖ كَرِيمٍ ٧ |
| 8. | ನಿಶ್ಚಯವಾಗಿಯೂ ಅದರಲ್ಲಿ ದೃಷ್ಟಾಂತವಿದೆ. ಆದರೂ ಅವರಲ್ಲಿ ಹೆಚ್ಚಿನವರು ಸತ್ಯವಿಶ್ವಾಸಿಗಳಾಗಿಲ್ಲ. | إِنَّ فِي ذَٰلِكَ لَأٓيَةٗۖ وَمَا كَانَ أَكۡثَرُهُم مُّؤۡمِنِينَ ٨ |
| 9. | ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಪ್ರಬಲನು ಮತ್ತು ದಯೆ ತೋರುವವನಾಗಿದ್ದಾನೆ. | وَإِنَّ رَبَّكَ لَهُوَ ٱلۡعَزِيزُ ٱلرَّحِيمُ ٩ |
| 10. | ನಿಮ್ಮ ಪರಿಪಾಲಕನು (ಅಲ್ಲಾಹು) ಮೂಸಾರನ್ನು ಕರೆದು ಹೇಳಿದ ಸಂದರ್ಭ: "ಅತಿರೇಕಿಗಳಾದ ಆ ಜನರ ಬಳಿಗೆ ಹೋಗಿರಿ. | وَإِذۡ نَادَىٰ رَبُّكَ مُوسَىٰٓ أَنِ ٱئۡتِ ٱلۡقَوۡمَ ٱلظَّٰلِمِينَ ١٠ |
| 11. | ಫರೋಹನ ಜನರ ಬಳಿಗೆ." ಅವರು ಅಲ್ಲಾಹನನ್ನು ಭಯಪಡುವುದಿಲ್ಲವೇ? | قَوۡمَ فِرۡعَوۡنَۚ أَلَا يَتَّقُونَ ١١ |
| 12. | ಮೂಸಾ ಹೇಳಿದರು: "ಓ ನನ್ನ ಪರಿಪಾಲಕನೇ! ನಿಶ್ಚಯವಾಗಿಯೂ ಅವರು ನನ್ನನ್ನು ನಿಷೇಧಿಸುವರೆಂದು ನನಗೆ ಭಯವಾಗುತ್ತಿದೆ. | قَالَ رَبِّ إِنِّيٓ أَخَافُ أَن يُكَذِّبُونِ ١٢ |

13. ನನಗೆ ಹೃದಯದಲ್ಲಿ ಇಕ್ಕಟ್ಟು ಅನುಭವವಾಗುತ್ತದೆ ಮತ್ತು ನನ್ನ ನಾಲಗೆ ಸರಿಯಾಗಿ ಚಲಿಸುವುದಿಲ್ಲ. ಆದ್ದರಿಂದ ನೀನು ಹಾರೂನರಿಗೂ ಸಂದೇಶ ಕಳುಹಿಸು.

وَيَضِيقُ صَدۡرِي وَلَا يَنطَلِقُ لِسَانِي فَأَرۡسِلۡ إِلَىٰ هَٰرُونَ ١٣

14. ಅವರಿಗೆ ನನ್ನ ಮೇಲೆ ಒಂದು ಅಪರಾಧ ಮಾಡಿದ ಆರೋಪವೂ ಇದೆ. ಆದ್ದರಿಂದ ಅವರು ನನ್ನನ್ನು ಕೊಲ್ಲುವರೆಂದು ನನಗೆ ಭಯವಾಗುತ್ತಿದೆ."

وَلَهُمۡ عَلَيَّ ذَنۢبٞ فَأَخَافُ أَن يَقۡتُلُونِ ١٤

15. ಅಲ್ಲಾಹು ಹೇಳಿದನು: "ಸಾಧ್ಯವೇ ಇಲ್ಲ. ನೀವಿಬ್ಬರೂ ನಮ್ಮ ದೃಷ್ಟಾಂತಗಳೊಂದಿಗೆ ಹೋಗಿರಿ. ನಿಶ್ಚಯವಾಗಿಯೂ ನಾವು ಎಲ್ಲವನ್ನೂ ಕೇಳುತ್ತಾ ನಿಮ್ಮ ಜೊತೆಗಿದ್ದೇವೆ."

قَالَ كَلَّاۖ فَٱذۡهَبَا بِـَٔايَٰتِنَآۖ إِنَّا مَعَكُم مُّسۡتَمِعُونَ ١٥

16. ನೀವು ಫರೋಹನ ಬಳಿಗೆ ಹೋಗಿರಿ. ನಂತರ ಹೇಳಿರಿ: "ನಾವು ಸರ್ವಲೋಕಗಳ ಪರಿಪಾಲಕನ (ಅಲ್ಲಾಹನ) ಸಂದೇಶವಾಹಕರಾಗಿದ್ದೇವೆ.

فَأۡتِيَا فِرۡعَوۡنَ فَقُولَآ إِنَّا رَسُولُ رَبِّ ٱلۡعَٰلَمِينَ ١٦

17. ಇಸ್ರಾಯೇಲ್ ಮಕ್ಕಳನ್ನು ನಮ್ಮ ಜೊತೆಗೆ ಕಳುಹಿಸಿಕೊಡಬೇಕು (ಎಂಬ ಆದೇಶದೊಂದಿಗೆ ಬಂದಿದ್ದೇವೆ)."

أَنۡ أَرۡسِلۡ مَعَنَا بَنِيٓ إِسۡرَٰٓءِيلَ ١٧

18. ಫರೋಹ ಹೇಳಿದನು: "ನೀನು ಮಗುವಾಗಿದ್ದಾಗ ನಾವು ನಿನ್ನನ್ನು ಸಾಕಲಿಲ್ಲವೇ? ನೀನಂತೂ ನಿನ್ನ ಆಯುಷ್ಯದಲ್ಲಿ ಅನೇಕ ವರ್ಷಗಳನ್ನು ನಮ್ಮ ಜೊತೆಗೇ ಕಳೆದಿರುವೆ.

قَالَ أَلَمۡ نُرَبِّكَ فِينَا وَلِيدٗا وَلَبِثۡتَ فِينَا مِنۡ عُمُرِكَ سِنِينَ ١٨

19. ನಂತರ ನೀನು ನಿನ್ನ ಆ ಕೆಟ್ಟ ಕೃತ್ಯವನ್ನು ಮಾಡಿದೆ. ನಿಜಕ್ಕೂ ನೀನು ಕೃತಜ್ಞತೆಯಿಲ್ಲದವನಾಗಿದ್ದೆ."

وَفَعَلۡتَ فَعۡلَتَكَ ٱلَّتِي فَعَلۡتَ وَأَنتَ مِنَ ٱلۡكَٰفِرِينَ ١٩

20. ಮೂಸಾ ಹೇಳಿದರು: "ನಾನು ಆ ಕೃತ್ಯವನ್ನು ಮಾಡಿದ್ದು ನಿಜ. ಆದರೆ ಆಗ ನಾನು ಸರಿದಾರಿಯನ್ನು ತಿಳಿಯದ ಜನರಲ್ಲಿ ಸೇರಿದ್ದೆನು.

قَالَ فَعَلۡتُهَآ إِذٗا وَأَنَا۠ مِنَ ٱلضَّآلِّينَ ٢٠

21. ನಂತರ ನಿಮ್ಮ ಭಯದಿಂದ ನಾನು ನಿಮ್ಮಿಂದ ದೂರ ಓಡಿದೆನು. ನಂತರ ನನ್ನ ಪರಿಪಾಲಕನು (ಅಲ್ಲಾಹು) ನನಗೆ ವಿವೇಕವನ್ನು ದಯಪಾಲಿಸಿದನು ಮತ್ತು ನನ್ನನ್ನು ಸಂದೇಶವಾಹಕರಲ್ಲಿ ಸೇರಿಸಿದನು.

فَفَرَرۡتُ مِنكُمۡ لَمَّا خِفۡتُكُمۡ فَوَهَبَ لِي رَبِّي حُكۡمٗا وَجَعَلَنِي مِنَ ٱلۡمُرۡسَلِينَ ٢١

22. ನೀನು ನನ್ನನ್ನು ಸಾಕಿ ಸಲಹಿದ್ದನ್ನು ನೀನು ನನಗೆ ಮಾಡಿದ ಉಪಕಾರವೆಂದು ಹೇಳುತ್ತಿರುವೆಯಾ? ಆದರೆ ವಾಸ್ತವವಾಗಿ, ನೀನು ಇಸ್ರಾಯೇಲ್ ಮಕ್ಕಳನ್ನು ನಿನ್ನ ಗುಲಾಮರನ್ನಾಗಿ ಮಾಡಿಕೊಂಡಿರುವೆ."

وَتِلۡكَ نِعۡمَةٞ تَمُنُّهَا عَلَيَّ أَنۡ عَبَّدتَّ بَنِيٓ إِسۡرَٰٓءِيلَ ٢٢

23. ಫರೋಹ ಕೇಳಿದನು: "ಸರ್ವಲೋಕಗಳ ಪರಿಪಾಲಕ ಎಂದರೇನು?"

قَالَ فِرۡعَوۡنُ وَمَا رَبُّ ٱلۡعَٰلَمِينَ ﴿٢٣﴾

24. ಮೂಸಾ ಹೇಳಿದರು: "ಭೂಮ್ಯಾಕಾಶಗಳ ಮತ್ತು ಅವುಗಳ ನಡುವೆಯಿರುವ ಎಲ್ಲಾ ವಸ್ತುಗಳ ಪರಿಪಾಲಕ. ನೀವು ದೃಢವಿಶ್ವಾಸವುಳ್ಳವರಾಗಿದ್ದರೆ."

قَالَ رَبُّ ٱلسَّمَٰوَٰتِ وَٱلۡأَرۡضِ وَمَا بَيۡنَهُمَآۖ إِن كُنتُم مُّوقِنِينَ ﴿٢٤﴾

25. ಫರೋಹ ತನ್ನ ಸುತ್ತಮುತ್ತಲಿರುವ ಜನರೊಡನೆ ಕೇಳಿದನು: "ಏನು? ನೀವು ಕಿವಿಗೊಡುವುದಿಲ್ಲವೇ?"

قَالَ لِمَنۡ حَوۡلَهُۥٓ أَلَا تَسۡتَمِعُونَ ﴿٢٥﴾

26. ಮೂಸಾ ಹೇಳಿದರು: "ಅವನೇ ನಿಮ್ಮ ಮತ್ತು ನಿಮ್ಮ ಪೂರ್ವಜರ ಪರಿಪಾಲಕ."

قَالَ رَبُّكُمۡ وَرَبُّ ءَابَآئِكُمُ ٱلۡأَوَّلِينَ ﴿٢٦﴾

27. ಫರೋಹ ಹೇಳಿದನು: "ನಿಮ್ಮ ಬಳಿಗೆ ಕಳುಹಿಸಲಾಗಿರುವ ಈ ನಿಮ್ಮ ಸಂದೇಶವಾಹಕ ನಿಜಕ್ಕೂ ಒಬ್ಬ ಮಾನಸಿಕ ಅಸ್ವಸ್ಥ."

قَالَ إِنَّ رَسُولَكُمُ ٱلَّذِيٓ أُرۡسِلَ إِلَيۡكُمۡ لَمَجۡنُونٞ ﴿٢٧﴾

28. ಮೂಸಾ ಹೇಳಿದರು: "ಅವನೇ ಪೂರ್ವ, ಪಶ್ಚಿಮ ಮತ್ತು ಅವುಗಳ ನಡುವೆಯಿರುವ ಎಲ್ಲಾ ವಸ್ತುಗಳ ಪರಿಪಾಲಕ. ನೀವು ಆಲೋಚಿಸುವವರಾಗಿದ್ದರೆ."

قَالَ رَبُّ ٱلۡمَشۡرِقِ وَٱلۡمَغۡرِبِ وَمَا بَيۡنَهُمَآۖ إِن كُنتُمۡ تَعۡقِلُونَ ﴿٢٨﴾

29. ಫರೋಹ ಹೇಳಿದನು: "ನೀನು ನನ್ನನ್ನು ಬಿಟ್ಟು ಬೇರೊಬ್ಬನನ್ನು ದೇವರೆಂದು ಸ್ವೀಕರಿಸಿದರೆ ನಾನು ನಿನ್ನನ್ನು ಖಂಡಿತ ಸೆರೆಮನೆಗೆ ತಳ್ಳುವೆನು."

قَالَ لَئِنِ ٱتَّخَذۡتَ إِلَٰهًا غَيۡرِي لَأَجۡعَلَنَّكَ مِنَ ٱلۡمَسۡجُونِينَ ﴿٢٩﴾

30. ಮೂಸಾ ಹೇಳಿದರು: "ಒಂದು ವೇಳೆ ನಾನು ನಿಮ್ಮ ಬಳಿಗೆ ಒಂದು ಸ್ಪಷ್ಟ ಸಾಕ್ಷ್ಯವನ್ನು ತಂದು ತೋರಿಸಿದರೆ (ನೀವು ನನ್ನ ಮಾತನ್ನು ನಂಬುವಿರಾ)?"

قَالَ أَوَلَوۡ جِئۡتُكَ بِشَيۡءٖ مُّبِينٖ ﴿٣٠﴾

31. ಫರೋಹ ಹೇಳಿದನು: "ಸರಿ! ತಂದು ತೋರಿಸು. ನೀನು ಸತ್ಯವಂತನಾಗಿದ್ದರೆ."

قَالَ فَأۡتِ بِهِۦٓ إِن كُنتَ مِنَ ٱلصَّٰدِقِينَ ﴿٣١﴾

32. ಆಗ ಮೂಸಾ ತಮ್ಮ ಕೋಲನ್ನು ಎಸೆದರು. ಅದು ತಕ್ಷಣ ಒಂದು ಸರ್ಪವಾಗಿ ಮಾರ್ಪಟ್ಟಿತು.

فَأَلۡقَىٰ عَصَاهُ فَإِذَا هِيَ ثُعۡبَانٞ مُّبِينٞ ﴿٣٢﴾

33. ಅವರು ತಮ್ಮ ಕೈಯನ್ನು (ಪಾರ್ಶ್ವದಿಂದ) ಎಳೆದರು. ಆಗ ಅದು ನೋಡುಗರಿಗೆ ಬೆಳ್ಳಗೆ ಹೊಳೆಯುವಂತೆ ಕಂಡಿತು.

وَنَزَعَ يَدَهُۥ فَإِذَا هِيَ بَيۡضَآءُ لِلنَّٰظِرِينَ ﴿٣٣﴾

34. ಫರೋಹ ತನ್ನ ಸುತ್ತಮುತ್ತಲಿದ್ದ ಮುಖಂಡರೊಂದಿಗೆ ಹೇಳಿದನು: "ನಿಜಕ್ಕೂ ಇವನೊಬ್ಬ ಅಗಾಧ ಜ್ಞಾನವಿರುವ ಮಾಟಗಾರನಾಗಿದ್ದಾನೆ.

قَالَ لِلۡمَلَإِ حَوۡلَهُۥٓ إِنَّ هَٰذَا لَسَٰحِرٌ عَلِيمٞ ﴿٣٤﴾

35. ತನ್ನ ಮಾಟಗಾರಿಕೆಯಿಂದ ನಿಮ್ಮನ್ನು ನಿಮ್ಮ ಊರಿನಿಂದ
ಓಡಿಸುವುದು ಇವನ ಉದ್ದೇಶವಾಗಿದೆ. ಹೇಳಿ, ನೀವೇನು
ಆದೇಶಿಸುತ್ತೀರಿ?”

يُرِيدُ أَن يُخۡرِجَكُم مِّنۡ أَرۡضِكُم بِسِحۡرِهِۦ
فَمَاذَا تَأۡمُرُونَ ٣٥

36. ಮುಖಂಡರು ಹೇಳಿದರು: “ಇವನ ಮತ್ತು ಇವನ ಸಹೋದರನ
ವಿಷಯವನ್ನು (ಸ್ವಲ್ಪ ಕಾಲ) ಮುಂದೂಡಿರಿ ಮತ್ತು
(ಮಾಟಗಾರರನ್ನು) ಒಟ್ಟು ಸೇರಿಸಲು ನಗರಗಳಿಗೆ ಆಳುಗಳನ್ನು
ಕಳುಹಿಸಿರಿ.

قَالُوٓاْ أَرۡجِهۡ وَأَخَاهُ وَٱبۡعَثۡ فِي ٱلۡمَدَآئِنِ
حَٰشِرِينَ ٣٦

37. ಅವರು ಅಗಾಧ ಜ್ಞಾನವಿರುವ ಎಲ್ಲಾ ಮಾಟಗಾರರನ್ನು
ಕರೆದುಕೊಂಡು ಬರಲಿ.”

يَأۡتُوكَ بِكُلِّ سَحَّارٍ عَلِيمٖ ٣٧

38. ನಂತರ ಒಂದು ಸುಪರಿಚಿತ ದಿನದ ನಿಶ್ಚಿತ ಸಮಯದಲ್ಲಿ
ಮಾಟಗಾರರನ್ನು ಒಟ್ಟು ಸೇರಿಸಲಾಯಿತು.

فَجُمِعَ ٱلسَّحَرَةُ لِمِيقَٰتِ يَوۡمٖ مَّعۡلُومٖ ٣٨

39. ಪ್ರಜೆಗಳೊಡನೆ ಕೇಳಲಾಯಿತು: “ನೀವು ಕೂಡ
ಒಟ್ಟುಗೂಡುತ್ತೀರಲ್ಲವೇ?

وَقِيلَ لِلنَّاسِ هَلۡ أَنتُم مُّجۡتَمِعُونَ ٣٩

40. ಮಾಟಗಾರರು ಗೆದ್ದರೆ ನಮಗೆ ಅವರನ್ನೇ ಹಿಂಬಾಲಿಸಬಹುದು.”

لَعَلَّنَا نَتَّبِعُ ٱلسَّحَرَةَ إِن كَانُواْ هُمُ ٱلۡغَٰلِبِينَ ٤٠

41. ನಂತರ ಮಾಟಗಾರರು ಬಂದಾಗ, ಅವರು ಫರೋಹನೊಡನೆ
ಕೇಳಿದರು: “ನಾವು ಗೆದ್ದರೆ ನಮಗೆ ಖಂಡಿತ
ಪ್ರತಿಫಲವಿದೆಯಲ್ಲವೇ?”

فَلَمَّا جَآءَ ٱلسَّحَرَةُ قَالُواْ لِفِرۡعَوۡنَ أَئِنَّ لَنَا
لَأَجۡرًا إِن كُنَّا نَحۡنُ ٱلۡغَٰلِبِينَ ٤١

42. ಫರೋಹ ಹೇಳಿದನು: “ಹೌದು! ನೀವು ಖಂಡಿತ ನನ್ನ ಆಪ್ತರಾಗಿ
ಬಿಡುವಿರಿ.”

قَالَ نَعَمۡ وَإِنَّكُمۡ إِذٗا لَّمِنَ ٱلۡمُقَرَّبِينَ ٤٢

43. ಮೂಸಾ ಅವರೊಡನೆ ಹೇಳಿದರು: “ನಿಮಗೆ ಎಸೆಯಲಿರುವು-
ದನ್ನು ಎಸೆಯಿರಿ.”

قَالَ لَهُم مُّوسَىٰٓ أَلۡقُواْ مَآ أَنتُم مُّلۡقُونَ ٤٣

44. ಆಗ ಅವರು ಅವರ ಹಗ್ಗಗಳನ್ನು ಮತ್ತು ಕೋಲುಗಳನ್ನು
ಎಸೆದರು. ಅವರು ಹೇಳಿದರು: “ಫರೋಹನ ಪ್ರತಿಷ್ಠೆಯ
ಮೇಲಾಣೆ! ನಿಶ್ಚಯವಾಗಿಯೂ ನಾವೇ ಗೆಲ್ಲುವೆವು.”

فَأَلۡقَوۡاْ حِبَالَهُمۡ وَعِصِيَّهُمۡ وَقَالُواْ بِعِزَّةِ فِرۡعَوۡنَ
إِنَّا لَنَحۡنُ ٱلۡغَٰلِبُونَ ٤٤

45. ಆಗ ಮೂಸಾ ತಮ್ಮ ಕೋಲನ್ನು ಎಸೆದರು. ಆಗ ಅಗೋ! ಅವರು
ಕಣ್ಕಟ್ಟಾಗಿ ನಿರ್ಮಿಸಿರುವುದೆಲ್ಲವನ್ನೂ ಅದು ನುಂಗತೊಡಗಿತು.

فَأَلۡقَىٰ مُوسَىٰ عَصَاهُ فَإِذَا هِيَ تَلۡقَفُ مَا
يَأۡفِكُونَ ٤٥

46. ಆಗ ಮಾಟಗಾರರು ಸಾಷ್ಟಾಂಗ ಬಿದ್ದರು.

فَأُلۡقِيَ ٱلسَّحَرَةُ سَٰجِدِينَ ٤٦

47. ಅವರು ಹೇಳಿದರು: “ನಾವು ಸರ್ವಲೋಕಗಳ ಪರಿಪಾಲಕನಲ್ಲಿ
(ಅಲ್ಲಾಹನಲ್ಲಿ) ವಿಶ್ವಾಸವಿಟ್ಟಿದ್ದೇವೆ.

قَالُوٓاْ ءَامَنَّا بِرَبِّ ٱلۡعَٰلَمِينَ ٤٧

| | | |
|---|---|---|
| 48. | ಮೂಸಾ ಮತ್ತು ಹಾರೂನರ ಪರಿಪಾಲಕನಲ್ಲಿ." | رَبِّ مُوسَىٰ وَهَٰرُونَ ﴿٤٨﴾ |
| 49. | ಫರೋಹ ಹೇಳಿದನು: "ನಾನು ಅಪ್ಪಣೆ ಕೊಡುವ ಮೊದಲೇ ನೀವು ಅವನಲ್ಲಿ ವಿಶ್ವಾಸವಿಟ್ಟಿರಾ? ನಿಶ್ಚಯವಾಗಿಯೂ ಅವನು ನಿಮಗೆ ಮಾಟಗಾರಿಕೆಯನ್ನು ಕಲಿಸಿಕೊಟ್ಟ ನಿಮ್ಮ ಮುಖಂಡನಾಗಿದ್ದಾನೆ. ನೀವು ಸದ್ಯವೇ ತಿಳಿಯುವಿರಿ. ಖಂಡಿತವಾಗಿಯೂ ನಾನು ನಿಮ್ಮ ಕೈ-ಕಾಲುಗಳನ್ನು ವಿರುದ್ಧ ದಿಕ್ಕಿನಿಂದ ಕತ್ತರಿಸಿ ನಿಮ್ಮೆಲ್ಲರನ್ನೂ ಶಿಲುಬೆಗೇರಿಸುವೆನು. | قَالَ ءَامَنتُمْ لَهُۥ قَبْلَ أَنْ ءَاذَنَ لَكُمْ ۖ إِنَّهُۥ لَكَبِيرُكُمُ ٱلَّذِى عَلَّمَكُمُ ٱلسِّحْرَ فَلَسَوْفَ تَعْلَمُونَ ۚ لَأُقَطِّعَنَّ أَيْدِيَكُمْ وَأَرْجُلَكُم مِّنْ خِلَٰفٍ وَلَأُصَلِّبَنَّكُمْ أَجْمَعِينَ ﴿٤٩﴾ |
| 50. | ಮಾಟಗಾರರು ಹೇಳಿದರು: "ಪರವಾಗಿಲ್ಲ. ನಿಶ್ಚಯವಾಗಿಯೂ ನಾವು ನಮ್ಮ ಪರಿಪಾಲಕನ (ಅಲ್ಲಾಹನ) ಬಳಿಗೆ ಮರಳುವೆವು. | قَالُوا۟ لَا ضَيْرَ ۖ إِنَّآ إِلَىٰ رَبِّنَا مُنقَلِبُونَ ﴿٥٠﴾ |
| 51. | ನಾವು ಮೊತ್ತಮೊದಲು ವಿಶ್ವಾಸವಿಟ್ಟ ಜನರಾಗಿರುವುದರಿಂದ ನಮ್ಮ ಪರಿಪಾಲಕನು (ಅಲ್ಲಾಹು) ನಮ್ಮ ಪಾಪಗಳನ್ನು ಕ್ಷಮಿಸುವನೆಂದು ನಮಗೆ ಭರವಸೆಯಿದೆ." | إِنَّا نَطْمَعُ أَن يَغْفِرَ لَنَا رَبُّنَا خَطَٰيَٰنَآ أَن كُنَّآ أَوَّلَ ٱلْمُؤْمِنِينَ ﴿٥١﴾ |
| 52. | ನಾವು ಮೂಸಾರಿಗೆ ದೇವವಾಣಿಯನ್ನು ನೀಡಿದೆವು: "ನೀವು ರಾತ್ರೋರಾತ್ರಿ ನನ್ನ ದಾಸರೊಡನೆ ಹೊರಡಿ. ಖಂಡಿತವಾಗಿಯೂ ಅವರು ನಿಮ್ಮನ್ನು ಹಿಂಬಾಲಿಸಿ ಬರುವರು." | وَأَوْحَيْنَآ إِلَىٰ مُوسَىٰٓ أَنْ أَسْرِ بِعِبَادِىٓ إِنَّكُم مُّتَّبَعُونَ ﴿٥٢﴾ |
| 53. | ಆಗ ಫರೋಹ ಎಲ್ಲಾ ಪಟ್ಟಣಗಳಿಗೂ ಸೈನಿಕರನ್ನು ಕಳುಹಿಸಿದನು. | فَأَرْسَلَ فِرْعَوْنُ فِى ٱلْمَدَآئِنِ حَٰشِرِينَ ﴿٥٣﴾ |
| 54. | "ನಿಜಕ್ಕೂ ಇವರೊಂದು ಚಿಕ್ಕ ಸಂಖ್ಯೆಯ ಜನರು. | إِنَّ هَٰٓؤُلَآءِ لَشِرْذِمَةٌ قَلِيلُونَ ﴿٥٤﴾ |
| 55. | ಆದರೂ ಇವರು ನಮ್ಮನ್ನೇ ರೇಗಿಸುತ್ತಿದ್ದಾರೆ. | وَإِنَّهُمْ لَنَا لَغَآئِظُونَ ﴿٥٥﴾ |
| 56. | ನಿಶ್ಚಯವಾಗಿಯೂ ನಾವು ದೊಡ್ಡ ಸಂಖ್ಯೆಯಲ್ಲಿದ್ದು (ಇವರ ಪಿತೂರಿಯನ್ನು ಸೋಲಿಸಲು) ಸದಾ ಎಚ್ಚರವಾಗಿರಬೇಕಾಗಿದೆ." | وَإِنَّا لَجَمِيعٌ حَٰذِرُونَ ﴿٥٦﴾ |
| 57. | ಕೊನೆಗೆ ನಾವು ಅವರನ್ನು ತೋಟಗಳಿಂದ ಮತ್ತು ನೀರಿನ ತೊರೆಗಳಿಂದ ಹೊರಹಾಕಿದೆವು. | فَأَخْرَجْنَٰهُم مِّن جَنَّٰتٍ وَعُيُونٍ ﴿٥٧﴾ |
| 58. | ಖಜಾನೆಗಳಿಂದ ಮತ್ತು ಉನ್ನತ ಸ್ಥಾನಮಾನಗಳಿಂದ. | وَكُنُوزٍ وَمَقَامٍ كَرِيمٍ ﴿٥٨﴾ |
| 59. | ಇದೇ ರೀತಿ. ನಂತರ ನಾವು ಇಸ್ರಾಯೇಲ್ ಮಕ್ಕಳನ್ನು ಆ ಎಲ್ಲಾ ವಸ್ತುಗಳ ವಾರೀಸುದಾರರನ್ನಾಗಿ ಮಾಡಿದೆವು. | كَذَٰلِكَ ۖ وَأَوْرَثْنَٰهَا بَنِىٓ إِسْرَٰٓءِيلَ ﴿٥٩﴾ |
| 60. | ಫರೋಹ ಮತ್ತು ಸೈನ್ಯವು ಸೂರ್ಯೋದಯವಾಗುತ್ತಿದ್ದಂತೆ ಅವರನ್ನು ಬೆನ್ನಟ್ಟಿದರು. | فَأَتْبَعُوهُم مُّشْرِقِينَ ﴿٦٠﴾ |
| 61. | ನಂತರ ಎರಡು ಗುಂಪುಗಳು ಪರಸ್ಪರ ಮುಖಾಮುಖಿಯಾದಾಗ ಮೂಸಾರ ಜೊತೆಗಿದ್ದವರು ಹೇಳಿದರು: "ಅಯ್ಯೋ! ನಾವು ಸಿಕ್ಕಿಬಿದ್ದೆವು." | فَلَمَّا تَرَٰٓءَا ٱلْجَمْعَانِ قَالَ أَصْحَٰبُ مُوسَىٰٓ إِنَّا لَمُدْرَكُونَ ﴿٦١﴾ |

62. ಮೂಸಾ ಹೇಳಿದರು: “ಸಾಧ್ಯವೇ ಇಲ್ಲ. ನನ್ನ ಪರಿಪಾಲಕ (ಅಲ್ಲಾಹು) ನನ್ನ ಜೊತೆಯಲ್ಲೇ ಇದ್ದಾನೆ. ಅವನು ನನಗೆ ಖಂಡಿತ ದಾರಿ ತೋರಿಸುತ್ತಾನೆ.”

قَالَ كَلَّآۖ إِنَّ مَعِيَ رَبِّي سَيَهۡدِينِ ٦٢

63. ಆಗ ನಾವು ಮೂಸಾರಿಗೆ, “ನಿಮ್ಮ ಕೋಲಿನಿಂದ ಸಮುದ್ರಕ್ಕೆ ಬಡಿಯಿರಿ” ಎಂದು ದೇವವಾಣಿ ನೀಡಿದೆವು. ಆಗ ಸಮುದ್ರವು ಇಬ್ಭಾಗವಾಯಿತು. ಅದರ ಒಂದೊಂದು ಭಾಗವು ಬೃಹತ್ ಪರ್ವತದಂತೆ ನಿಂತಿತು.

فَأَوۡحَيۡنَآ إِلَىٰ مُوسَىٰٓ أَنِ ٱضۡرِب بِّعَصَاكَ ٱلۡبَحۡرَۖ فَٱنفَلَقَ فَكَانَ كُلُّ فِرۡقٖ كَٱلطَّوۡدِ ٱلۡعَظِيمِ ٦٣

64. ನಾವು ಇತರರನ್ನು (ಫರೋಹನ ಜನರನ್ನು) ಕೂಡ ಅದರ ಸಮೀಪಕ್ಕೆ ತಂದೆವು.

وَأَزۡلَفۡنَا ثَمَّ ٱلۡأٓخَرِينَ ٦٤

65. ನಾವು ಮೂಸಾ ಮತ್ತು ಅವರ ಜೊತೆಗಿದ್ದ ಎಲ್ಲರನ್ನೂ ರಕ್ಷಿಸಿದೆವು.

وَأَنجَيۡنَا مُوسَىٰ وَمَن مَّعَهُۥٓ أَجۡمَعِينَ ٦٥

66. ನಂತರ ಇತರರನ್ನು (ಫರೋಹ ಮತ್ತು ಅವನ ಜನರನ್ನು) ಮುಳುಗಿಸಿ ಬಿಟ್ಟೆವು.

ثُمَّ أَغۡرَقۡنَا ٱلۡأٓخَرِينَ ٦٦

67. ನಿಶ್ಚಯವಾಗಿಯೂ ಅದರಲ್ಲಿ ದೃಷ್ಟಾಂತವಿದೆ. ಆದರೂ ಅವರಲ್ಲಿ ಹೆಚ್ಚಿನವರು ಸತ್ಯವಿಶ್ವಾಸಿಗಳಾಗಿಲ್ಲ.

إِنَّ فِي ذَٰلِكَ لَأٓيَةٗۖ وَمَا كَانَ أَكۡثَرُهُم مُّؤۡمِنِينَ ٦٧

68. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಪ್ರಬಲನು ಮತ್ತು ದಯೆ ತೋರುವವನಾಗಿದ್ದಾನೆ.

وَإِنَّ رَبَّكَ لَهُوَ ٱلۡعَزِيزُ ٱلرَّحِيمُ ٦٨

69. ಅವರಿಗೆ ಇಬ್ರಾಹೀಮರ ಸಮಾಚಾರವನ್ನು ಓದಿಕೊಡಿ.

وَٱتۡلُ عَلَيۡهِمۡ نَبَأَ إِبۡرَٰهِيمَ ٦٩

70. ಅವರು ತಮ್ಮ ತಂದೆಯೊಂದಿಗೆ ಮತ್ತು ತಮ್ಮ ಜನರೊಂದಿಗೆ “ನೀವು ಏನನ್ನು ಆರಾಧಿಸುತ್ತಿದ್ದೀರಿ?” ಎಂದು ಕೇಳಿದ ಸಂದರ್ಭ.

إِذۡ قَالَ لِأَبِيهِ وَقَوۡمِهِۦ مَا تَعۡبُدُونَ ٧٠

71. ಅವರು ಹೇಳಿದರು: “ನಾವು ವಿಗ್ರಹಗಳನ್ನು ಆರಾಧಿಸುತ್ತಿದ್ದೇವೆ ಮತ್ತು ಅವುಗಳ ಮುಂದೆ ಧ್ಯಾನ ಮಾಡುತ್ತಾ ಕೂರುತ್ತೇವೆ.”

قَالُواْ نَعۡبُدُ أَصۡنَامٗا فَنَظَلُّ لَهَا عَٰكِفِينَ ٧١

72. ಇಬ್ರಾಹೀಮ್ ಕೇಳಿದರು: “ನೀವು ಅವರನ್ನು ಕರೆದು ಪ್ರಾರ್ಥಿಸಿದರೆ ಅವರಿಗೆ ಕೇಳುತ್ತದೆಯೇ?

قَالَ هَلۡ يَسۡمَعُونَكُمۡ إِذۡ تَدۡعُونَ ٧٢

73. ಅಥವಾ ಅವರು ನಿಮಗೆ ಉಪಕಾರ ಅಥವಾ ತೊಂದರೆ ಮಾಡುತ್ತಾರೆಯೇ?”

أَوۡ يَنفَعُونَكُمۡ أَوۡ يَضُرُّونَ ٧٣

74. ಅವರು ಹೇಳಿದರು: “(ಅದರ ಬಗ್ಗೆ ನಮಗೇನೂ ತಿಳಿದಿಲ್ಲ). ಆದರೆ ನಮ್ಮ ಪೂರ್ವಜರು ಹೀಗೆ ಮಾಡುತ್ತಾ ಬಂದಿದ್ದನ್ನು ನಾವು ನೋಡಿದ್ದೇವೆ.”

قَالُواْ بَلۡ وَجَدۡنَآ ءَابَآءَنَا كَذَٰلِكَ يَفۡعَلُونَ ٧٤

75. ಇಬ್ರಾಹೀಮ್ ಕೇಳಿದರು: “ನೀವು ಏನು ಆರಾಧಿಸುತ್ತಿದ್ದೀರಿ

قَالَ أَفَرَءَيۡتُم مَّا كُنتُمۡ تَعۡبُدُونَ ٧٥

ಎಂದು ನೀವು ಆಲೋಚಿಸಿ ನೋಡಿದ್ದೀರಾ?

76. ನೀವು ಮತ್ತು ನಿಮ್ಮ ಪೂರ್ವ ಪಿತಾಮಹರು?

أَنتُمْ وَءَابَآؤُكُمُ ٱلْأَقْدَمُونَ ٧٦

77. ನಿಶ್ಚಯವಾಗಿಯೂ ಅವರು (ಆ ದೇವರುಗಳು) ನನ್ನ ವೈರಿಗಳಾಗಿದ್ದಾರೆ; ಸರ್ವಲೋಕಗಳ ಪರಿಪಾಲಕನ (ಅಲ್ಲಾಹನ) ಹೊರತು.

فَإِنَّهُمْ عَدُوٌّ لِّىٓ إِلَّا رَبَّ ٱلْعَٰلَمِينَ ٧٧

78. ಅವನು (ಅಲ್ಲಾಹು) ಯಾರೆಂದರೆ, ನನ್ನನ್ನು ಸೃಷ್ಟಿಸಿ ನನಗೆ ದಾರಿ ತೋರಿಸಿದವನು.

ٱلَّذِى خَلَقَنِى فَهُوَ يَهْدِينِ ٧٨

79. ನನಗೆ ಆಹಾರ-ಪಾನೀಯಗಳನ್ನು ನೀಡುವವನು.

وَٱلَّذِى هُوَ يُطْعِمُنِى وَيَسْقِينِ ٧٩

80. ನನಗೆ ಕಾಯಿಲೆ ಬಂದರೆ ಅವನು ಅದನ್ನು ಗುಣಪಡಿಸುತ್ತಾನೆ.

وَإِذَا مَرِضْتُ فَهُوَ يَشْفِينِ ٨٠

81. ಅವನು ನನ್ನನ್ನು ಮೃತಪಡಿಸುತ್ತಾನೆ, ನಂತರ ನನಗೆ ಪುನಃ ಜೀವ ನೀಡುತ್ತಾನೆ.

وَٱلَّذِى يُمِيتُنِى ثُمَّ يُحْيِينِ ٨١

82. ಅವನು ಯಾರೆಂದರೆ, ಪ್ರತಿಫಲ ದಿನದಂದು ನನ್ನ ಪಾಪಗಳನ್ನು ಕ್ಷಮಿಸುವನೆಂದು ನಾನು ಭರವಸೆಯಿಟ್ಟವನು.

وَٱلَّذِىٓ أَطْمَعُ أَن يَغْفِرَ لِى خَطِيٓـَٔتِى يَوْمَ ٱلدِّينِ ٨٢

83. ನನ್ನ ಪರಿಪಾಲಕನೇ! ನನಗೆ ತೀರ್ಪು ನೀಡುವ ಶಕ್ತಿಯನ್ನು ನೀಡು ಮತ್ತು ನನ್ನನ್ನು ನೀತಿವಂತರಲ್ಲಿ ಸೇರಿಸು.

رَبِّ هَبْ لِى حُكْمًا وَأَلْحِقْنِى بِٱلصَّٰلِحِينَ ٨٣

84. ಮುಂಬರುವ ತಲೆಮಾರುಗಳಲ್ಲಿ ನನಗೆ ಅತ್ಯುತ್ತಮ ಕೀರ್ತಿಯನ್ನು ಕರುಣಿಸು.

وَٱجْعَل لِّى لِسَانَ صِدْقٍ فِى ٱلْءَاخِرِينَ ٨٤

85. ಸುಖ ಸಂತೋಷಗಳಿಂದ ಕೂಡಿದ ಸ್ವರ್ಗದ ವಾರಸುದಾರರಲ್ಲಿ ನನ್ನನ್ನು ಸೇರಿಸು.

وَٱجْعَلْنِى مِن وَرَثَةِ جَنَّةِ ٱلنَّعِيمِ ٨٥

86. ನನ್ನ ತಂದೆಯನ್ನು ಕ್ಷಮಿಸು. ನಿಜಕ್ಕೂ ಅವನು ದಾರಿತಪ್ಪಿದವರಲ್ಲಿ ಸೇರಿದ್ದಾನೆ.

وَٱغْفِرْ لِأَبِىٓ إِنَّهُۥ كَانَ مِنَ ٱلضَّآلِّينَ ٨٦

87. ಮನುಷ್ಯರಿಗೆ ಜೀವ ನೀಡಿ ಎಬ್ಬಿಸುವ ದಿನದಂದು ನನಗೆ ಅವಮಾನ ಮಾಡಬೇಡ.

وَلَا تُخْزِنِى يَوْمَ يُبْعَثُونَ ٨٧

88. ಅಂದರೆ, ಆಸ್ತಿ ಮತ್ತು ಮಕ್ಕಳು ಯಾವುದೇ ಉಪಕಾರ ಮಾಡದ ದಿನ!

يَوْمَ لَا يَنفَعُ مَالٌ وَلَا بَنُونَ ٨٨

89. ಪಾಪಮುಕ್ತ ಹೃದಯದೊಂದಿಗೆ ಅಲ್ಲಾಹನ ಬಳಿ ಬರುವವನ ಹೊರತು.

إِلَّا مَنْ أَتَى ٱللَّهَ بِقَلْبٍ سَلِيمٍ ٨٩

90. ದೇವಭಯವುಳ್ಳವರಿಗೆ ಸ್ವರ್ಗವನ್ನು ಹತ್ತಿರಗೊಳಿಸಲಾಗುವುದು.

وَأُزْلِفَتِ ٱلْجَنَّةُ لِلْمُتَّقِينَ ٩٠

| | | |
|---|---|---|
| 91. | ದುರ್ಮಾರ್ಗಿಗಳಿಗೆ ನರಕವನ್ನು ತೆರೆದು ತೋರಿಸಲಾಗುವುದು. | وَبُرِّزَتِ ٱلْجَحِيمُ لِلْغَاوِينَ ﴿٩١﴾ |
| 92. | ಅವರೊಡನೆ ಕೇಳಲಾಗುವುದು: "ನೀವು ಆರಾಧಿಸುತ್ತಿದ್ದವರು ಎಲ್ಲಿ ಹೋದರು? | وَقِيلَ لَهُمْ أَيْنَ مَا كُنتُمْ تَعْبُدُونَ ﴿٩٢﴾ |
| 93. | ಅಲ್ಲಾಹನನ್ನು ಬಿಟ್ಟು. ಅವರು ನಿಮಗೆ ಸಹಾಯ ಮಾಡುತ್ತಾರೆಯೇ? ಅಥವಾ ಅವರು ಅವರಿಗೇ ಸಹಾಯ ಮಾಡುವರೇ?" | مِن دُونِ ٱللَّهِ هَلْ يَنصُرُونَكُمْ أَوْ يَنتَصِرُونَ ﴿٩٣﴾ |
| 94. | ಆದ್ದರಿಂದ ಅವರನ್ನು (ಆ ದೇವರುಗಳನ್ನು) ಮತ್ತು ದುರ್ಮಾರ್ಗಿ-ಗಳನ್ನು ನರಕಾಗ್ನಿಗೆ ತಲೆಕೆಳಗಾಗಿ ಎಸೆಯಲಾಗುವುದು. | فَكُبْكِبُوا۟ فِيهَا هُمْ وَٱلْغَاوُۥنَ ﴿٩٤﴾ |
| 95. | ಮತ್ತು ಇಬ್ಲೀಸನ ಸಂಪೂರ್ಣ ಸೈನ್ಯವನ್ನು. | وَجُنُودُ إِبْلِيسَ أَجْمَعُونَ ﴿٩٥﴾ |
| 96. | ಅಲ್ಲಿ ಅವರು ಪರಸ್ಪರ ತರ್ಕಿಸುತ್ತಾ ಹೇಳುವರು: | قَالُوا۟ وَهُمْ فِيهَا يَخْتَصِمُونَ ﴿٩٦﴾ |
| 97. | "ಅಲ್ಲಾಹನಾಣೆ! ನಿಜಕ್ಕೂ ನಾವು ಸ್ಪಷ್ಟವಾಗಿ ದಾರಿತಪ್ಪಿದ್ದೆವು. | تَٱللَّهِ إِن كُنَّا لَفِى ضَلَٰلٍ مُّبِينٍ ﴿٩٧﴾ |
| 98. | ನಾವು ನಿಮ್ಮನ್ನು ಸರ್ವಲೋಕಗಳ ಪರಿಪಾಲಕನಿಗೆ (ಅಲ್ಲಾಹನಿಗೆ) ಸಮಾನರೆಂದು ಕಲ್ಪಿಸಿದಾಗ. | إِذْ نُسَوِّيكُم بِرَبِّ ٱلْعَٰلَمِينَ ﴿٩٨﴾ |
| 99. | ಆ ಅಪರಾಧಿಗಳೇ ನಮ್ಮನ್ನು ದಾರಿತಪ್ಪಿಸಿದ್ದು. | وَمَآ أَضَلَّنَآ إِلَّا ٱلْمُجْرِمُونَ ﴿٩٩﴾ |
| 100. | ಈಗ ನಮಗೆ ಶಿಫಾರಸು ಮಾಡಲು ಯಾರೂ ಇಲ್ಲ. | فَمَا لَنَا مِن شَٰفِعِينَ ﴿١٠٠﴾ |
| 101. | ಆತ್ಮೀಯ ಮಿತ್ರರೂ ಇಲ್ಲ. | وَلَا صَدِيقٍ حَمِيمٍ ﴿١٠١﴾ |
| 102. | ನಮಗೆ (ಇಹಲೋಕಕ್ಕೆ) ಮರಳಿ ಹೋಗುವ ಒಂದು ಅವಕಾಶವಿ-ರುತ್ತಿದ್ದರೆ ನಾವು ಸತ್ಯವಿಶ್ವಾಸಿಗಳಲ್ಲಿ ಸೇರುತ್ತಿದ್ದೆವು." | فَلَوْ أَنَّ لَنَا كَرَّةً فَنَكُونَ مِنَ ٱلْمُؤْمِنِينَ ﴿١٠٢﴾ |
| 103. | ನಿಶ್ಚಯವಾಗಿಯೂ ಅದರಲ್ಲಿ ದೃಷ್ಟಾಂತವಿದೆ. ಆದರೂ ಅವರಲ್ಲಿ ಹೆಚ್ಚಿನವರು ಸತ್ಯವಿಶ್ವಾಸಿಗಳಾಗಿಲ್ಲ. | إِنَّ فِى ذَٰلِكَ لَءَايَةً ۖ وَمَا كَانَ أَكْثَرُهُم مُّؤْمِنِينَ ﴿١٠٣﴾ |
| 104. | ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಪ್ರಬಲನು ಮತ್ತು ದಯೆ ತೋರುವವನಾಗಿದ್ದಾನೆ. | وَإِنَّ رَبَّكَ لَهُوَ ٱلْعَزِيزُ ٱلرَّحِيمُ ﴿١٠٤﴾ |
| 105. | ನೂಹರ ಜನರು ಸಂದೇಶವಾಹಕರುಗಳನ್ನು ನಿಷೇಧಿಸಿದರು. | كَذَّبَتْ قَوْمُ نُوحٍ ٱلْمُرْسَلِينَ ﴿١٠٥﴾ |
| 106. | ಅವರೊಡನೆ ಅವರ ಸಹೋದರ ನೂಹ್ ಹೇಳಿದ ಸಂದರ್ಭ."ನೀವು ಅಲ್ಲಾಹನನ್ನು ಭಯಪಡುವುದಿಲ್ಲವೇ? | إِذْ قَالَ لَهُمْ أَخُوهُمْ نُوحٌ أَلَا تَتَّقُونَ ﴿١٠٦﴾ |
| 107. | ನಿಶ್ಚಯವಾಗಿಯೂ ನಾನು ನಿಮ್ಮ ಬಳಿಗೆ ಕಳುಹಿಸಲಾದ ಒಬ್ಬ ಪ್ರಾಮಾಣಿಕ ಸಂದೇಶವಾಹಕನಾಗಿದ್ದೇನೆ. | إِنِّى لَكُمْ رَسُولٌ أَمِينٌ ﴿١٠٧﴾ |
| 108. | ಆದ್ದರಿಂದ ನೀವು ಅಲ್ಲಾಹನನ್ನು ಭಯಪಡಿರಿ ಮತ್ತು ನನ್ನನ್ನು ಅನುಸರಿಸಿರಿ. | فَٱتَّقُوا۟ ٱللَّهَ وَأَطِيعُونِ ﴿١٠٨﴾ |

109. ನಾನು ನಿಮ್ಮಲ್ಲಿ ಯಾವುದೇ ಪ್ರತಿಫಲವನ್ನು ಕೇಳುವುದಿಲ್ಲ. ನನಗೆ ಪ್ರತಿಫಲ ನೀಡಬೇಕಾದವನು ಸರ್ವಲೋಕಗಳ ಪರಿಪಾಲಕನು (ಅಲ್ಲಾಹು) ಮಾತ್ರ.

وَمَآ أَسۡـَٔلُكُمۡ عَلَيۡهِ مِنۡ أَجۡرٍۖ إِنۡ أَجۡرِيَ إِلَّا عَلَىٰ رَبِّ ٱلۡعَٰلَمِينَ ١٠٩

110. ಆದ್ದರಿಂದ ನೀವು ಅಲ್ಲಾಹನನ್ನು ಭಯಪಡಿರಿ ಮತ್ತು ನನ್ನನ್ನು ಅನುಸರಿಸಿರಿ."

فَٱتَّقُواْ ٱللَّهَ وَأَطِيعُونِ ١١٠

111. ಅವರು ಹೇಳಿದರು: "ನಾವು ನಿನ್ನನ್ನು ಅನುಸರಿಸಬೇಕೇ? ನಿನ್ನ ಹಿಂದೆಯಿರುವುದು ಕೆಳವರ್ಗದ ಜನರು ಮಾತ್ರ."

قَالُوٓاْ أَنُؤۡمِنُ لَكَ وَٱتَّبَعَكَ ٱلۡأَرۡذَلُونَ ١١١

112. ನೂಹ್ ಹೇಳಿದರು: "ಅವರು ಮೊದಲು ಏನು ಮಾಡುತ್ತಿದ್ದರೆಂದು ನನಗೇನು ಗೊತ್ತು?

قَالَ وَمَا عِلۡمِي بِمَا كَانُواْ يَعۡمَلُونَ ١١٢

113. ಅವರನ್ನು ವಿಚಾರಣೆ ಮಾಡಬೇಕಾದ ಹೊಣೆ ನನ್ನ ಪರಿಪಾಲಕನದ್ದು (ಅಲ್ಲಾಹನದ್ದು). ನಿಮಗೆ ಹಾಗೆ ಅನ್ನಿಸುತ್ತಿದ್ದರೆ!

إِنۡ حِسَابُهُمۡ إِلَّا عَلَىٰ رَبِّيۖ لَوۡ تَشۡعُرُونَ ١١٣

114. ನಾನು ಸತ್ಯವಿಶ್ವಾಸಿಗಳನ್ನು ದೂರ ತಳ್ಳುವುದಿಲ್ಲ.

وَمَآ أَنَا۠ بِطَارِدِ ٱلۡمُؤۡمِنِينَ ١١٤

115. ನಾನೊಬ್ಬ ಸ್ಪಷ್ಟ ಮುನ್ನೆಚ್ಚರಿಕೆಗಾರ ಮಾತ್ರ."

إِنۡ أَنَا۠ إِلَّا نَذِيرٞ مُّبِينٞ ١١٥

116. ಅವರು ಹೇಳಿದರು: "ಓ ನೂಹ್! ನೀನು ಇದನ್ನು ನಿಲ್ಲಿಸದಿದ್ದರೆ ನಾವು ನಿನ್ನನ್ನು ಕಲ್ಲೆಸೆದು ಕೊಲ್ಲುವೆವು."

قَالُواْ لَئِن لَّمۡ تَنتَهِ يَٰنُوحُ لَتَكُونَنَّ مِنَ ٱلۡمَرۡجُومِينَ ١١٦

117. ನೂಹ್ ಹೇಳಿದರು: "ನನ್ನ ಪರಿಪಾಲಕನೇ! ನಿಶ್ಚಯವಾಗಿಯೂ ನನ್ನ ಜನರು ನನ್ನನ್ನು ನಿಷೇಧಿಸಿದ್ದಾರೆ.

قَالَ رَبِّ إِنَّ قَوۡمِي كَذَّبُونِ ١١٧

118. ಆದ್ದರಿಂದ ನನ್ನ ಮತ್ತು ಅವರ ನಡುವೆ ನಿರ್ಣಾಯಕವಾದ ತೀರ್ಪನ್ನು ನೀಡು. ನನ್ನನ್ನು ಮತ್ತು ನನ್ನ ಜೊತೆಯಲ್ಲಿರುವ ಸತ್ಯವಿ-ಶ್ವಾಸಿಗಳನ್ನು ರಕ್ಷಿಸು."

فَٱفۡتَحۡ بَيۡنِي وَبَيۡنَهُمۡ فَتۡحٗا وَنَجِّنِي وَمَن مَّعِيَ مِنَ ٱلۡمُؤۡمِنِينَ ١١٨

119. ಆಗ ನಾವು ಅವರನ್ನು ಮತ್ತು ಅವರ ಜೊತೆಯಲ್ಲಿದ್ದವರನ್ನು ತುಂಬಿ ತುಳುಕುವ ನಾವೆಯಲ್ಲಿ ರಕ್ಷಿಸಿದೆವು.

فَأَنجَيۡنَٰهُ وَمَن مَّعَهُۥ فِي ٱلۡفُلۡكِ ٱلۡمَشۡحُونِ ١١٩

120. ನಂತರ, ಉಳಿದವರನ್ನು ಮುಳುಗಿಸಿ ಕೊಂದೆವು.

ثُمَّ أَغۡرَقۡنَا بَعۡدُ ٱلۡبَاقِينَ ١٢٠

121. ನಿಶ್ಚಯವಾಗಿಯೂ ಅದರಲ್ಲಿ ದೃಷ್ಟಾಂತವಿದೆ. ಆದರೂ ಅವರಲ್ಲಿ ಹೆಚ್ಚಿನವರು ಸತ್ಯವಿಶ್ವಾಸಿಗಳಾಗಿಲ್ಲ.

إِنَّ فِي ذَٰلِكَ لَأٓيَةٗۖ وَمَا كَانَ أَكۡثَرُهُم مُّؤۡمِنِينَ ١٢١

122. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಪ್ರಬಲನು ಮತ್ತು ದಯೆ ತೋರುವವನಾಗಿದ್ದಾನೆ.

وَإِنَّ رَبَّكَ لَهُوَ ٱلۡعَزِيزُ ٱلرَّحِيمُ ١٢٢

123. ಆದ್ ಗೋತ್ರದವರು ಸಂದೇಶವಾಹಕರುಗಳನ್ನು ನಿಷೇಧಿಸಿದರು.

كَذَّبَتۡ عَادٌ ٱلۡمُرۡسَلِينَ ١٢٣

124. ಅವರೊಡನೆ ಅವರ ಸಹೋದರ ಹೂದ್ ಹೇಳಿದ ಸಂದರ್ಭ: “ನೀವು ಅಲ್ಲಾಹನನ್ನು ಭಯಪಡುವುದಿಲ್ಲವೇ?

إِذۡ قَالَ لَهُمۡ أَخُوهُمۡ هُودٌ أَلَا تَتَّقُونَ ١٢٤

125. ನಿಜಕ್ಕೂ ನಾನು ನಿಮ್ಮ ಬಳಿಗೆ ಕಳುಹಿಸಲಾದ ಒಬ್ಬ ಪ್ರಾಮಾಣಿಕ ಸಂದೇಶವಾಹಕನಾಗಿದ್ದೇನೆ.

إِنِّي لَكُمۡ رَسُولٌ أَمِينٞ ١٢٥

126. ಆದ್ದರಿಂದ ನೀವು ಅಲ್ಲಾಹನನ್ನು ಭಯಪಡಿರಿ ಮತ್ತು ನನ್ನನ್ನು ಅನುಸರಿಸಿರಿ.

فَٱتَّقُواْ ٱللَّهَ وَأَطِيعُونِ ١٢٦

127. ನಾನು ನಿಮ್ಮಲ್ಲಿ ಯಾವುದೇ ಪ್ರತಿಫಲವನ್ನು ಕೇಳುವುದಿಲ್ಲ. ನನಗೆ ಪ್ರತಿಫಲ ನೀಡಬೇಕಾದವನು ಸರ್ವಲೋಕಗಳ ಪರಿಪಾಲಕನು (ಅಲ್ಲಾಹು) ಮಾತ್ರ.

وَمَآ أَسۡـَٔلُكُمۡ عَلَيۡهِ مِنۡ أَجۡرٍۖ إِنۡ أَجۡرِيَ إِلَّا عَلَىٰ رَبِّ ٱلۡعَٰلَمِينَ ١٢٧

128. ನೀವು ಎಲ್ಲಾ ಗುಡ್ಡಗಳಲ್ಲೂ ಮೋಜು ಮಸ್ತಿಗಾಗಿ ನಿಶಾನಿಗಳನ್ನು (ಕಟ್ಟಡಗಳನ್ನು) ನಿರ್ಮಿಸುತ್ತಿದ್ದೀರಾ?

أَتَبۡنُونَ بِكُلِّ رِيعٍ ءَايَةٗ تَعۡبَثُونَ ١٢٨

129. ನೀವು ಮಹಾ ರಚನೆಗಳನ್ನು (ಭವ್ಯ ಸೌಧಗಳನ್ನು) ನಿರ್ಮಿ-ಸುತ್ತಿದ್ದೀರಾ? ನೀವು ಇಲ್ಲೇ ಶಾಶ್ವತವಾಗಿ ವಾಸಿಸುವಿರಿ ಎಂಬ ಕಲ್ಪನೆಯಲ್ಲಿ?

وَتَتَّخِذُونَ مَصَانِعَ لَعَلَّكُمۡ تَخۡلُدُونَ ١٢٩

130. ನೀವು ಯಾರನ್ನಾದರೂ ಹಿಡಿಯುವಾಗ ಬಹಳ ಕಠೋರವಾಗಿ ಹಿಡಿಯುತ್ತೀರಿ.

وَإِذَا بَطَشۡتُم بَطَشۡتُمۡ جَبَّارِينَ ١٣٠

131. ಆದ್ದರಿಂದ ನೀವು ಅಲ್ಲಾಹನನ್ನು ಭಯಪಡಿರಿ ಮತ್ತು ನನ್ನನ್ನು ಅನುಸರಿಸಿರಿ.

فَٱتَّقُواْ ٱللَّهَ وَأَطِيعُونِ ١٣١

132. ನಿಮಗೆ ತಿಳಿದೇ ಇರುವ ವಸ್ತುಗಳ ಮೂಲಕ ನಿಮಗೆ ಸಹಾಯ ಮಾಡಿದವನನ್ನು (ಅಲ್ಲಾಹನನ್ನು) ಭಯಪಡಿರಿ.

وَٱتَّقُواْ ٱلَّذِيٓ أَمَدَّكُم بِمَا تَعۡلَمُونَ ١٣٢

133. ಅವನು ನಿಮಗೆ ಜಾನುವಾರುಗಳು ಮತ್ತು ಮಕ್ಕಳು-ಮರಿಗಳನ್ನು ನೀಡಿ ಸಹಾಯ ಮಾಡಿದ್ದಾನೆ.

أَمَدَّكُم بِأَنۡعَٰمٖ وَبَنِينَ ١٣٣

134. ತೋಟಗಳು ಮತ್ತು ಚಿಲುಮೆಗಳನ್ನು ನೀಡಿ.

وَجَنَّٰتٖ وَعُيُونٍ ١٣٤

135. ಆ ಭಯಾನಕ ದಿನದ ಶಿಕ್ಷೆಯು ನಿಮ್ಮ ಮೇಲೆರಗಬಹುದೆಂದು ನನಗೆ ಭಯವಾಗುತ್ತಿದೆ.”

إِنِّيٓ أَخَافُ عَلَيۡكُمۡ عَذَابَ يَوۡمٍ عَظِيمٖ ١٣٥

136. ಅವರು ಹೇಳಿದರು: “ನೀನು ನಮಗೆ ಉಪದೇಶ ಮಾಡಿದರೂ ಅಥವಾ ಉಪದೇಶ ಮಾಡದಿದ್ದರೂ ನಮ್ಮ ಮಟ್ಟಿಗೆ ಅದು ಸಮಾನವಾಗಿದೆ.

قَالُواْ سَوَآءٌ عَلَيۡنَآ أَوَعَظۡتَ أَمۡ لَمۡ تَكُن مِّنَ ٱلۡوَٰعِظِينَ ١٣٦

137. ಇದು ಪ್ರಾಚೀನ ಕಾಲದ ಜನರ ವರ್ತನೆಯಾಗಿದೆ.

إِنۡ هَٰذَآ إِلَّا خُلُقُ ٱلۡأَوَّلِينَ ١٣٧

138. ನಾವು ಎಂದಿಗೂ ಶಿಕ್ಷೆಗೆ ಗುರಿಯಾಗುವುದಿಲ್ಲ.” وَمَا نَحۡنُ بِمُعَذَّبِينَ ١٣٨

139. ಅವರು ಹೂದರನ್ನು ನಿಷೇಧಿಸಿದರು. ಆದ್ದರಿಂದ ನಾವು ಅವರನ್ನು ನಾಶ ಮಾಡಿದೆವು. ನಿಶ್ಚಯವಾಗಿಯೂ ಅದರಲ್ಲಿ ದೃಷ್ಟಾಂತವಿದೆ. ಆದರೂ ಅವರಲ್ಲಿ ಹೆಚ್ಚಿನವರು ಸತ್ಯವಿಶ್ವಾಸಿಗಳಾಗಿಲ್ಲ. فَكَذَّبُوهُ فَأَهۡلَكۡنَٰهُمۡۚ إِنَّ فِي ذَٰلِكَ لَأٓيَةٗۖ وَمَا كَانَ أَكۡثَرُهُم مُّؤۡمِنِينَ ١٣٩

140. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಪ್ರಬಲನು ಮತ್ತು ದಯೆ ತೋರುವವನಾಗಿದ್ದಾನೆ. وَإِنَّ رَبَّكَ لَهُوَ ٱلۡعَزِيزُ ٱلرَّحِيمُ ١٤٠

141. ಸಮೂದ್ ಗೋತ್ರದವರು ಸಂದೇಶವಾಹಕರುಗಳನ್ನು ನಿಷೇಧಿಸಿದರು. كَذَّبَتۡ ثَمُودُ ٱلۡمُرۡسَلِينَ ١٤١

142. ಅವರೊಡನೆ ಅವರ ಸಹೋದರ ಸಾಲಿಹ್ ಕೇಳಿದ ಸಂದರ್ಭ: “ನೀವು ಅಲ್ಲಾಹನನ್ನು ಭಯಪಡುವುದಿಲ್ಲವೇ? إِذۡ قَالَ لَهُمۡ أَخُوهُمۡ صَٰلِحٌ أَلَا تَتَّقُونَ ١٤٢

143. ನಿಜಕ್ಕೂ ನಾನು ನಿಮ್ಮ ಬಳಿಗೆ ಕಳುಹಿಸಲಾದ ಒಬ್ಬ ಪ್ರಾಮಾಣಿಕ ಸಂದೇಶವಾಹಕನಾಗಿದ್ದೇನೆ. إِنِّي لَكُمۡ رَسُولٌ أَمِينٞ ١٤٣

144. ಆದ್ದರಿಂದ ನೀವು ಅಲ್ಲಾಹನನ್ನು ಭಯಪಡಿರಿ ಮತ್ತು ನನ್ನನ್ನು ಅನುಸರಿಸಿರಿ. فَٱتَّقُواْ ٱللَّهَ وَأَطِيعُونِ ١٤٤

145. ನಾನು ನಿಮ್ಮಲ್ಲಿ ಯಾವುದೇ ಪ್ರತಿಫಲವನ್ನು ಕೇಳುವುದಿಲ್ಲ. ನನಗೆ ಪ್ರತಿಫಲ ನೀಡಬೇಕಾದವನು ಸರ್ವಲೋಕಗಳ ಪರಿಪಾಲಕನು (ಅಲ್ಲಾಹು) ಮಾತ್ರ. وَمَآ أَسۡـَٔلُكُمۡ عَلَيۡهِ مِنۡ أَجۡرٍۖ إِنۡ أَجۡرِيَ إِلَّا عَلَىٰ رَبِّ ٱلۡعَٰلَمِينَ ١٤٥

146. ಇಲ್ಲಿರುವ ವಸ್ತುಗಳೊಂದಿಗೆ ನಿರ್ಭಯದಿಂದ ಜೀವಿಸಲು ನಿಮ್ಮನ್ನು ಬಿಟ್ಟುಬಿಡಲಾಗುವುದೇ? أَتُتۡرَكُونَ فِي مَا هَٰهُنَآ ءَامِنِينَ ١٤٦

147. ಅಂದರೆ ಈ ತೋಟಗಳು ಮತ್ತು ಕಾಲುವೆಗಳೊಂದಿಗೆ. فِي جَنَّٰتٖ وَعُيُونٖ ١٤٧

148. ಈ ಹೊಲಗಳು ಮತ್ತು ಮೃದು ಹಾಗೂ ರುಚಿಯಾದ ಹಣ್ಣುಗಳಿರುವ ಖರ್ಜೂರದ ಮರಗಳೊಂದಿಗೆ. وَزُرُوعٖ وَنَخۡلٖ طَلۡعُهَا هَضِيمٞ ١٤٨

149. ನೀವು ಕೌಶಲ್ಯದಿಂದ ಪರ್ವತಗಳನ್ನು ಕೊರೆದು ಮನೆಗಳನ್ನು ನಿರ್ಮಿಸುತ್ತೀರಿ. وَتَنۡحِتُونَ مِنَ ٱلۡجِبَالِ بُيُوتٗا فَٰرِهِينَ ١٤٩

150. ಆದ್ದರಿಂದ ನೀವು ಅಲ್ಲಾಹನನ್ನು ಭಯಪಡಿರಿ ಮತ್ತು ನನ್ನನ್ನು ಅನುಸರಿಸಿರಿ. فَٱتَّقُواْ ٱللَّهَ وَأَطِيعُونِ ١٥٠

151. ಹದ್ದು ಮೀರಿದವರ ಆಜ್ಞೆಗಳನ್ನು ಅನುಸರಿಸಬೇಡಿ. وَلَا تُطِيعُوٓاْ أَمۡرَ ٱلۡمُسۡرِفِينَ ١٥١

| | |
|---|---|
| 152. ಅವರು ಯಾರೆಂದರೆ, ಭೂಮಿಯಲ್ಲಿ ಕಿಡಿಗೇಡಿತನ ಮಾಡುವವರು; ಸುಧಾರಣೆ ಮಾಡದವರು.” | ٱلَّذِينَ يُفۡسِدُونَ فِي ٱلۡأَرۡضِ وَلَا يُصۡلِحُونَ ﴿١٥٢﴾ |
| 153. ಅವರು ಹೇಳಿದರು: “ನೀನು ಮಾಟ ಬಾಧಿತ ಜನರಲ್ಲಿ ಒಬ್ಬನಾಗಿರುವೆ. | قَالُوٓاْ إِنَّمَآ أَنتَ مِنَ ٱلۡمُسَحَّرِينَ ﴿١٥٣﴾ |
| 154. ನೀನು ನಮ್ಮಂತಿರುವ ಒಬ್ಬ ಮನುಷ್ಯನಲ್ಲದೆ ಇನ್ನೇನೂ ಅಲ್ಲ. ನೀನು ಸತ್ಯವನ್ನೇ ಹೇಳುತ್ತಿದ್ದರೆ ಯಾವುದಾದರೂ ದೃಷ್ಟಾಂತವನ್ನು ತಂದು ತೋರಿಸು.” | مَآ أَنتَ إِلَّا بَشَرٞ مِّثۡلُنَا فَأۡتِ بِـَٔايَةٍ إِن كُنتَ مِنَ ٱلصَّٰدِقِينَ ﴿١٥٤﴾ |
| 155. ಸಾಲಿಹ್ ಹೇಳಿದರು: “ನೋಡಿ! ಇದು ಒಂಟೆ. ಇದಕ್ಕೆ ನೀರು ಕುಡಿಯಲು ಒಂದು ಸರದಿಯಿದೆ. ನಿಮಗೂ ಕೂಡ ನೀರು ಕುಡಿಯುವ ಒಂದು ನಿಶ್ಚಿತ ದಿನವಿದೆ. | قَالَ هَٰذِهِۦ نَاقَةٞ لَّهَا شِرۡبٞ وَلَكُمۡ شِرۡبُ يَوۡمٖ مَّعۡلُومٖ ﴿١٥٥﴾ |
| 156. ಆದ್ದರಿಂದ ಇದಕ್ಕೆ ಯಾವುದೇ ತೊಂದರೆ ಕೊಡಬೇಡಿ. ಹಾಗೇನಾದರೂ ಆದರೆ ಭಯಾನಕ ದಿನದ ಶಿಕ್ಷೆಯು ನಿಮ್ಮನ್ನು ಹಿಡಿಯುವುದು.” | وَلَا تَمَسُّوهَا بِسُوٓءٖ فَيَأۡخُذَكُمۡ عَذَابُ يَوۡمٍ عَظِيمٖ ﴿١٥٦﴾ |
| 157. ಆದರೂ ಅವರು ಅದರ ಕಾಲುಗಳನ್ನು ಕಡಿದು ಸಾಯಿಸಿದರು. ನಂತರ (ಶಿಕ್ಷೆಯನ್ನು ಕಂಡಾಗ) ಅವರು ಮರುಗಿದರು. | فَعَقَرُوهَا فَأَصۡبَحُواْ نَٰدِمِينَ ﴿١٥٧﴾ |
| 158. ಶಿಕ್ಷೆಯು ಅವರನ್ನು ಹಿಡಿದು ಬಿಟ್ಟಿತು. ನಿಶ್ಚಯವಾಗಿಯೂ ಅದರಲ್ಲಿ ದೃಷ್ಟಾಂತವಿದೆ. ಆದರೂ ಅವರಲ್ಲಿ ಹೆಚ್ಚಿನವರು ಸತ್ಯವಿಶ್ವಾಸಿಗಳಾಗಿಲ್ಲ. | فَأَخَذَهُمُ ٱلۡعَذَابُۚ إِنَّ فِي ذَٰلِكَ لَأٓيَةٗۖ وَمَا كَانَ أَكۡثَرُهُم مُّؤۡمِنِينَ ﴿١٥٨﴾ |
| 159. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಪ್ರಬಲನು ಮತ್ತು ದಯೆ ತೋರುವವನಾಗಿದ್ದಾನೆ. | وَإِنَّ رَبَّكَ لَهُوَ ٱلۡعَزِيزُ ٱلرَّحِيمُ ﴿١٥٩﴾ |
| 160. ಲೂತರ ಜನರು ಸಂದೇಶವಾಹಕರುಗಳನ್ನು ನಿಷೇಧಿಸಿದರು. | كَذَّبَتۡ قَوۡمُ لُوطٍ ٱلۡمُرۡسَلِينَ ﴿١٦٠﴾ |
| 161. ಅವರೊಡನೆ ಅವರ ಸಹೋದರ ಲೂತ್ ಹೇಳಿದ ಸಂದರ್ಭ: “ನೀವು ಅಲ್ಲಾಹನನ್ನು ಭಯಪಡುವುದಿಲ್ಲವೇ? | إِذۡ قَالَ لَهُمۡ أَخُوهُمۡ لُوطٌ أَلَا تَتَّقُونَ ﴿١٦١﴾ |
| 162. ನಿಜಕ್ಕೂ ನಾನು ನಿಮ್ಮ ಬಳಿಗೆ ಕಳುಹಿಸಲಾದ ಒಬ್ಬ ಪ್ರಾಮಾಣಿಕ ಸಂದೇಶವಾಹಕನಾಗಿದ್ದೇನೆ. | إِنِّي لَكُمۡ رَسُولٌ أَمِينٞ ﴿١٦٢﴾ |
| 163. ಆದ್ದರಿಂದ ನೀವು ಅಲ್ಲಾಹನನ್ನು ಭಯಪಡಿರಿ ಮತ್ತು ನನ್ನನ್ನು ಅನುಸರಿಸಿರಿ. | فَٱتَّقُواْ ٱللَّهَ وَأَطِيعُونِ ﴿١٦٣﴾ |
| 164. ನಾನು ನಿಮ್ಮಲ್ಲಿ ಯಾವುದೇ ಪ್ರತಿಫಲವನ್ನು ಕೇಳುವುದಿಲ್ಲ. ನನಗೆ ಪ್ರತಿಫಲ ನೀಡಬೇಕಾದವನು ಸರ್ವಲೋಕಗಳ ಪರಿಪಾಲಕನು (ಅಲ್ಲಾಹು) ಮಾತ್ರ. | وَمَآ أَسۡـَٔلُكُمۡ عَلَيۡهِ مِنۡ أَجۡرٍۖ إِنۡ أَجۡرِيَ إِلَّا عَلَىٰ رَبِّ ٱلۡعَٰلَمِينَ ﴿١٦٤﴾ |

أَتَأۡتُونَ ٱلذُّكۡرَانَ مِنَ ٱلۡعَٰلَمِينَ ١٦٥

165. ನೀವು (ತೆವಲು ತೀರಿಸಿಕೊಳ್ಳಲು) ಸರ್ವಲೋಕದವರ ಪೈಕಿ ಕೇವಲ ಪುರುಷರ ಬಳಿಗೆ ಹೋಗುತ್ತೀರಾ?

وَتَذَرُونَ مَا خَلَقَ لَكُمۡ رَبُّكُم مِّنۡ أَزۡوَٰجِكُمۚ بَلۡ أَنتُمۡ قَوۡمٌ عَادُونَ ١٦٦

166. ನಿಮ್ಮ ಪರಿಪಾಲಕನು (ಅಲ್ಲಾಹು) ನಿಮಗೋಸ್ಕರ ಸೃಷ್ಟಿಸಿದ ನಿಮ್ಮ ಪತ್ನಿಯರನ್ನು ಬಿಟ್ಟುಬಿಡುತ್ತೀರಾ? ಅಲ್ಲ, ವಾಸ್ತವವಾಗಿ ನೀವು ಹದ್ದು ಮೀರಿದ ಜನರಾಗಿದ್ದೀರಿ."

قَالُواْ لَئِن لَّمۡ تَنتَهِ يَٰلُوطُ لَتَكُونَنَّ مِنَ ٱلۡمُخۡرَجِينَ ١٦٧

167. ಅವರು ಹೇಳಿದರು: "ಓ ಲೂತ್! ನೀನು ಇದನ್ನು ನಿಲ್ಲಿಸದಿದ್ದರೆ ನಾವು ನಿನ್ನನ್ನು ಖಂಡಿತ ಊರಿನಿಂದ ಓಡಿಸುವೆವು."

قَالَ إِنِّي لِعَمَلِكُم مِّنَ ٱلۡقَالِينَ ١٦٨

168. ಲೂತ್ ಹೇಳಿದರು: "ನಿಶ್ಚಯವಾಗಿಯೂ ನೀವು ಮಾಡುತ್ತಿರುವ ಈ ಕೃತ್ಯವನ್ನು ನಾನು ಬಹಳ ದ್ವೇಷಿಸುತ್ತೇನೆ.

رَبِّ نَجِّنِي وَأَهۡلِي مِمَّا يَعۡمَلُونَ ١٦٩

169. ಓ ನನ್ನ ಪರಿಪಾಲಕನೇ! ನನ್ನನ್ನು ಮತ್ತು ನನ್ನ ಕುಟುಂಬವನ್ನು ಇವರು ಮಾಡುವ ಈ ಕೃತ್ಯದಿಂದ ರಕ್ಷಿಸು."

فَنَجَّيۡنَٰهُ وَأَهۡلَهُۥٓ أَجۡمَعِينَ ١٧٠

170. ಆದ್ದರಿಂದ ನಾವು ಅವರನ್ನು ಮತ್ತು ಅವರ ಕುಟುಂಬದವರನ್ನು ರಕ್ಷಿಸಿದೆವು.

إِلَّا عَجُوزٗا فِي ٱلۡغَٰبِرِينَ ١٧١

171. ಒಬ್ಬ ಮುದುಕಿಯ ಹೊರತು. ಆಕೆ ಹಿಂದೆ ಉಳಿದವರಲ್ಲಿ ಸೇರಿದಳು.

ثُمَّ دَمَّرۡنَا ٱلۡأٓخَرِينَ ١٧٢

172. ನಂತರ ನಾವು ಅವರೆಲ್ಲರನ್ನೂ ನಾಶ ಮಾಡಿದೆವು.

وَأَمۡطَرۡنَا عَلَيۡهِم مَّطَرٗاۖ فَسَآءَ مَطَرُ ٱلۡمُنذَرِينَ ١٧٣

173. ನಾವು ಅವರ ಮೇಲೆ ಒಂದು ವಿಶೇಷ ಮಳೆಯನ್ನು ಸುರಿಸಿದೆವು. ಎಚ್ಚರಿಕೆ ನೀಡಲಾದವರ ಮೇಲೆ ಸುರಿದ ಆ ಮಳೆಯು ಬಹಳ ನಿಕೃಷ್ಟವಾಗಿದೆ.

إِنَّ فِي ذَٰلِكَ لَأٓيَةٗۖ وَمَا كَانَ أَكۡثَرُهُم مُّؤۡمِنِينَ ١٧٤

174. ನಿಶ್ಚಯವಾಗಿಯೂ ಅದರಲ್ಲಿ ದೃಷ್ಟಾಂತವಿದೆ. ಆದರೂ ಅವರಲ್ಲಿ ಹೆಚ್ಚಿನವರು ಸತ್ಯವಿಶ್ವಾಸಿಗಳಾಗಿಲ್ಲ.

وَإِنَّ رَبَّكَ لَهُوَ ٱلۡعَزِيزُ ٱلرَّحِيمُ ١٧٥

175. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಪ್ರಬಲನು ಮತ್ತು ದಯೆ ತೋರುವವನಾಗಿದ್ದಾನೆ.

كَذَّبَ أَصۡحَٰبُ لۡـَٔيۡكَةِ ٱلۡمُرۡسَلِينَ ١٧٦

176. ಐಕತ್‌ನ ಜನರು (ಮದ್ಯನ್ ದೇಶದವರು) ಸಂದೇಶವಾಹಕರುಗ-ಳನ್ನು ನಿಷೇಧಿಸಿದರು.

إِذۡ قَالَ لَهُمۡ شُعَيۡبٌ أَلَا تَتَّقُونَ ١٧٧

177. ಅವರೊಡನೆ ಶುಐಬರು ಕೇಳಿದ ಸಂದರ್ಭ: "ನೀವು ಅಲ್ಲಾಹನನ್ನು ಭಯಪಡುವುದಿಲ್ಲವೇ?

إِنِّي لَكُمۡ رَسُولٌ أَمِينٞ ١٧٨

178. ನಿಜಕ್ಕೂ ನಾನು ನಿಮ್ಮ ಬಳಿಗೆ ಕಳುಹಿಸಲಾದ ಒಬ್ಬ ಪ್ರಾಮಾಣಿಕ ಸಂದೇಶವಾಹಕನಾಗಿದ್ದೇನೆ.

| | |
|---|---|
| 179. ಆದ್ದರಿಂದ ನೀವು ಅಲ್ಲಾಹನನ್ನು ಭಯಪಡಿರಿ ಮತ್ತು ನನ್ನನ್ನು ಅನುಸರಿಸಿರಿ. | فَٱتَّقُواْ ٱللَّهَ وَأَطِيعُونِ ١٧٩ |
| 180. ನಾನು ನಿಮ್ಮಲ್ಲಿ ಯಾವುದೇ ಪ್ರತಿಫಲವನ್ನು ಕೇಳುವುದಿಲ್ಲ. ನನಗೆ ಪ್ರತಿಫಲ ನೀಡಬೇಕಾದವನು ಸರ್ವಲೋಕಗಳ ಪರಿಪಾಲಕನು (ಅಲ್ಲಾಹು) ಮಾತ್ರ. | وَمَآ أَسۡـَٔلُكُمۡ عَلَيۡهِ مِنۡ أَجۡرٍۖ إِنۡ أَجۡرِيَ إِلَّا عَلَىٰ رَبِّ ٱلۡعَٰلَمِينَ ١٨٠ |
| 181. ಅಳತೆಯನ್ನು ಪೂರ್ತಿಯಾಗಿ ಕೊಡಿ. ಜನರಿಗೆ ನಷ್ಟ ಮಾಡುವವರಲ್ಲಿ ಸೇರಬೇಡಿ. | ۞أَوۡفُواْ ٱلۡكَيۡلَ وَلَا تَكُونُواْ مِنَ ٱلۡمُخۡسِرِينَ ١٨١ |
| 182. ಸರಿಯಾದ ತಕ್ಕಡಿಯಲ್ಲಿ ತೂಕ ಮಾಡಿರಿ. | وَزِنُواْ بِٱلۡقِسۡطَاسِ ٱلۡمُسۡتَقِيمِ ١٨٢ |
| 183. ಜನರಿಗೆ ಅವರ ವಸ್ತುಗಳನ್ನು ಕಡಿಮೆ ಮಾಡಬೇಡಿ. ಭೂಮಿಯಲ್ಲಿ ಕಿಡಿಗೇಡಿತನ ಮಾಡುತ್ತಾ ಅಲೆಯಬೇಡಿ. | وَلَا تَبۡخَسُواْ ٱلنَّاسَ أَشۡيَآءَهُمۡ وَلَا تَعۡثَوۡاْ فِي ٱلۡأَرۡضِ مُفۡسِدِينَ ١٨٣ |
| 184. ನಿಮ್ಮನ್ನು ಮತ್ತು ನಿಮಗಿಂತ ಮೊದಲಿನ ಜನರನ್ನು ಸೃಷ್ಟಿಸಿದ ಅಲ್ಲಾಹನನ್ನು ಭಯಪಡಿರಿ." | وَٱتَّقُواْ ٱلَّذِي خَلَقَكُمۡ وَٱلۡجِبِلَّةَ ٱلۡأَوَّلِينَ ١٨٤ |
| 185. ಅವರು ಹೇಳಿದರು: "ನಿಶ್ಚಯವಾಗಿಯೂ ನೀನು ಮಾಟ ಬಾಧಿತ ಜನರಲ್ಲಿ ಒಬ್ಬನಾಗಿರುವೆ. | قَالُوٓاْ إِنَّمَآ أَنتَ مِنَ ٱلۡمُسَحَّرِينَ ١٨٥ |
| 186. ನೀನು ನಮ್ಮಂತಿರುವ ಒಬ್ಬ ಮನುಷ್ಯನಲ್ಲದೆ ಇನ್ನೇನೂ ಅಲ್ಲ. ನಿಶ್ಚಯವಾಗಿಯೂ ನೀನು ಸುಳ್ಳು ಹೇಳುತ್ತಿದ್ದೀಯೆಂದೇ ನಾವು ಭಾವಿಸುತ್ತೇವೆ. | وَمَآ أَنتَ إِلَّا بَشَرٞ مِّثۡلُنَا وَإِن نَّظُنُّكَ لَمِنَ ٱلۡكَٰذِبِينَ ١٨٦ |
| 187. ನೀನು ಹೇಳುವುದು ನಿಜವೇ ಆಗಿದ್ದರೆ ಆಕಾಶದಿಂದ (ನಮ್ಮ ಮೇಲೆ) ತುಣುಕುಗಳು ಬೀಳುವಂತೆ ಮಾಡು." | فَأَسۡقِطۡ عَلَيۡنَا كِسَفٗا مِّنَ ٱلسَّمَآءِ إِن كُنتَ مِنَ ٱلصَّٰدِقِينَ ١٨٧ |
| 188. ಶುಐಬ್ ಹೇಳಿದರು: "ನೀವು ಮಾಡುತ್ತಿರುವ ಕರ್ಮಗಳ ಬಗ್ಗೆ ನನ್ನ ಪರಿಪಾಲಕನು (ಅಲ್ಲಾಹು) ಬಹಳ ಚೆನ್ನಾಗಿ ತಿಳಿದಿದ್ದಾನೆ." | قَالَ رَبِّيٓ أَعۡلَمُ بِمَا تَعۡمَلُونَ ١٨٨ |
| 189. ಅವರು ಶುಐಬರನ್ನು ನಿಷೇಧಿಸಿದರು. ಆದ್ದರಿಂದ ಮೋಡದ ನೆರಳು ಮುಸುಕಿದ ದಿನದ ಶಿಕ್ಷೆಯು ಅವರನ್ನು ಹಿಡಿಯಿತು. ನಿಜಕ್ಕೂ ಅದೊಂದು ಭಯಾನಕ ದಿನದ ಶಿಕ್ಷೆಯಾಗಿತ್ತು. | فَكَذَّبُوهُ فَأَخَذَهُمۡ عَذَابُ يَوۡمِ ٱلظُّلَّةِۚ إِنَّهُۥ كَانَ عَذَابَ يَوۡمٍ عَظِيمٍ ١٨٩ |
| 190. ನಿಶ್ಚಯವಾಗಿಯೂ ಅದರಲ್ಲಿ ದೃಷ್ಟಾಂತವಿದೆ. ಆದರೂ ಅವರಲ್ಲಿ ಹೆಚ್ಚಿನವರು ಸತ್ಯವಿಶ್ವಾಸಿಗಳಾಗಿಲ್ಲ. | إِنَّ فِي ذَٰلِكَ لَأٓيَةٗۖ وَمَا كَانَ أَكۡثَرُهُم مُّؤۡمِنِينَ ١٩٠ |
| 191. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಪ್ರಬಲನು ಮತ್ತು ದಯೆ ತೋರುವವನಾಗಿದ್ದಾನೆ. | وَإِنَّ رَبَّكَ لَهُوَ ٱلۡعَزِيزُ ٱلرَّحِيمُ ١٩١ |
| 192. ನಿಶ್ಚಯವಾಗಿಯೂ ಈ ಕುರ್‌ಆನ್ ಸರ್ವಲೋಕಗಳ | وَإِنَّهُۥ لَتَنزِيلُ رَبِّ ٱلۡعَٰلَمِينَ ١٩٢ |

ಪರಿಪಾಲಕನಿಂದ (ಅಲ್ಲಾಹನಿಂದ) ಅವತೀರ್ಣವಾಗಿದೆ.

193. ವಿಶ್ವಸ್ತ ಆತ್ಮ (ಜಿಬ್ರೀಲ್) ಇದರೊಂದಿಗೆ ಇಳಿದು ಬಂದಿದ್ದಾರೆ.

نَزَلَ بِهِ ٱلرُّوحُ ٱلْأَمِينُ ١٩٣

194. ನಿಮ್ಮ (ಪ್ರವಾದಿಯ) ಹೃದಯಕ್ಕೆ. ನೀವು ಮುನ್ನೆಚ್ಚರಿಕೆ ನೀಡುವವರಲ್ಲಿ ಸೇರಲೆಂದು.

عَلَىٰ قَلْبِكَ لِتَكُونَ مِنَ ٱلْمُنذِرِينَ ١٩٤

195. ಸ್ಪಷ್ಟ ಅರಬ್ಬಿ ಭಾಷೆಯಲ್ಲಿ.

بِلِسَانٍ عَرَبِيٍّ مُّبِينٍ ١٩٥

196. ನಿಶ್ಚಯವಾಗಿಯೂ ಪೂರ್ವಕಾಲದವರ ಗ್ರಂಥಗಳಲ್ಲಿ ಇದರ ಬಗ್ಗೆ ಉಲ್ಲೇಖವಿದೆ.

وَإِنَّهُۥ لَفِى زُبُرِ ٱلْأَوَّلِينَ ١٩٦

197. ಇಸ್ರಾಯೇಲ್ ಮಕ್ಕಳಲ್ಲಿರುವ ವಿದ್ವಾಂಸರು ಕೂಡ ಇದರ ಸತ್ಯತೆಯನ್ನು ತಿಳಿದಿದ್ದಾರೆ ಎನ್ನುವುದು ಇವರಿಗೆ (ಸತ್ಯನಿಷೇಧಿಗಳಿಗೆ) ಒಂದು ದೃಷ್ಟಾಂತವಾಗುವುದಿಲ್ಲವೇ?

أَوَلَمْ يَكُن لَّهُمْ ءَايَةً أَن يَعْلَمَهُۥ عُلَمَٰٓؤُا۟ بَنِىٓ إِسْرَٰٓءِيلَ ١٩٧

198. ನಾವು ಅದನ್ನು ಅರಬ್ಬೇತರ ವ್ಯಕ್ತಿಗೆ ಅವತೀರ್ಣಗೊಳಿಸಿ,

وَلَوْ نَزَّلْنَٰهُ عَلَىٰ بَعْضِ ٱلْأَعْجَمِينَ ١٩٨

199. ನಂತರ ಆತ ಅದನ್ನು ಇವರಿಗೆ ಓದಿಕೊಟ್ಟರೂ ಇವರು ಅದರಲ್ಲಿ ವಿಶ್ವಾಸವಿಡುವುದಿಲ್ಲ.

فَقَرَأَهُۥ عَلَيْهِم مَّا كَانُوا۟ بِهِۦ مُؤْمِنِينَ ١٩٩

200. ಈ ರೀತಿ ನಾವು ಅಪರಾಧಿಗಳ ಹೃದಯಗಳಲ್ಲಿ ಅದನ್ನು (ಸತ್ಯನಿಷೇಧವನ್ನು) ತೂರಿಸಿದ್ದೇವೆ.

كَذَٰلِكَ سَلَكْنَٰهُ فِى قُلُوبِ ٱلْمُجْرِمِينَ ٢٠٠

201. ಯಾತನಾಮಯ ಶಿಕ್ಷೆಯನ್ನು ನೋಡುವ ತನಕ ಅವರು ಅದರಲ್ಲಿ ವಿಶ್ವಾಸವಿಡುವುದಿಲ್ಲ.

لَا يُؤْمِنُونَ بِهِۦ حَتَّىٰ يَرَوُا۟ ٱلْعَذَابَ ٱلْأَلِيمَ ٢٠١

202. ಅದು ಹಠಾತ್ತನೆ ಅವರ ಬಳಿಗೆ ಬರುತ್ತದೆ. ಅವರು ಅದನ್ನು ನಿರೀಕ್ಷಿಸಿಯೇ ಇರುವುದಿಲ್ಲ.

فَيَأْتِيَهُم بَغْتَةً وَهُمْ لَا يَشْعُرُونَ ٢٠٢

203. ಅವರು ಕೇಳುತ್ತಾರೆ: “ನಮಗೆ ಸ್ವಲ್ಪ ಕಾಲಾವಕಾಶ ಸಿಗಬಹುದೇ?”

فَيَقُولُوا۟ هَلْ نَحْنُ مُنظَرُونَ ٢٠٣

204. ಹಾಗಾದರೆ ಅವರು ನಮ್ಮ ಶಿಕ್ಷೆಗಾಗಿ ತ್ವರೆ ಮಾಡುತ್ತಿದ್ದಾರೆಯೇ?

أَفَبِعَذَابِنَا يَسْتَعْجِلُونَ ٢٠٤

205. ನೀವು ಆಲೋಚಿಸಿ ನೋಡಿದ್ದೀರಾ? ನಾವು ಅವರಿಗೆ ಅನೇಕ ವರ್ಷಗಳ ತನಕ ಸವಲತ್ತುಗಳನ್ನು ನೀಡಿ,

أَفَرَءَيْتَ إِن مَّتَّعْنَٰهُمْ سِنِينَ ٢٠٥

206. ನಂತರ ಅವರಿಗೆ ವಾಗ್ದಾನ ಮಾಡಲಾದ ಶಿಕ್ಷೆಯು ಅವರ ಬಳಿಗೆ ಬಂದರೆ,

ثُمَّ جَآءَهُم مَّا كَانُوا۟ يُوعَدُونَ ٢٠٦

207. ಅವರಿಗೆ ನೀಡಲಾದ ಯಾವುದೇ ಸವಲತ್ತುಗಳು ಅವರಿಗೆ ಪ್ರಯೋಜನ ನೀಡುವುದಿಲ್ಲ.

مَآ أَغْنَىٰ عَنْهُم مَّا كَانُوا۟ يُمَتَّعُونَ ٢٠٧

208. ನಾವು ಯಾವುದೇ ಊರನ್ನು, ಅದಕ್ಕೆ ಮುನ್ನೆಚ್ಚರಿಕೆ

وَمَآ أَهْلَكْنَا مِن قَرْيَةٍ إِلَّا لَهَا مُنذِرُونَ ٢٠٨

ನೀಡುವವರನ್ನು (ಪ್ರವಾದಿಗಳನ್ನು) ಕಳುಹಿಸಿದ ನಂತರವಲ್ಲದೆ ನಾಶ ಮಾಡಿಲ್ಲ.

| | |
|---|---|
| 209. ಇದೊಂದು ಉಪದೇಶ ಮಾತ್ರ. ನಾವು ಎಂದಿಗೂ ಅನ್ಯಾಯ ಮಾಡುವುದಿಲ್ಲ. | ذِكۡرَىٰ وَمَا كُنَّا ظَٰلِمِينَ ٢٠٩ |
| 210. ಶೈತಾನರು ಈ ಕುರ್‌ಆನನ್ನು ತಂದಿಲ್ಲ. | وَمَا تَنَزَّلَتۡ بِهِ ٱلشَّيَٰطِينُ ٢١٠ |
| 211. ಅದು ಅವರಿಗೆ ಯೋಗ್ಯವೂ ಅಲ್ಲ. ಅವರಿಗೆ ಅಂತಹ ಸಾಮರ್ಥ್ಯವೂ ಇಲ್ಲ. | وَمَا يَنۢبَغِي لَهُمۡ وَمَا يَسۡتَطِيعُونَ ٢١١ |
| 212. ವಾಸ್ತವವಾಗಿ, ಅವರನ್ನು (ದೇವವಾಣಿಗೆ) ಕಿವಿಗೊಡದಂತೆ ದೂರ ಸರಿಸಲಾಗಿದೆ. | إِنَّهُمۡ عَنِ ٱلسَّمۡعِ لَمَعۡزُولُونَ ٢١٢ |
| 213. ಆದ್ದರಿಂದ ನೀವು ಅಲ್ಲಾಹನ ಜೊತೆಗೆ ಬೇರೆ ದೇವರುಗಳನ್ನು ಕರೆದು ಪ್ರಾರ್ಥಿಸಬೇಡಿ. ಹಾಗೇನಾದರೂ ಆದರೆ ನೀವು ಶಿಕ್ಷೆಗೆ ಗುರಿಯಾದವರಲ್ಲಿ ಸೇರುವಿರಿ. | فَلَا تَدۡعُ مَعَ ٱللَّهِ إِلَٰهًا ءَاخَرَ فَتَكُونَ مِنَ ٱلۡمُعَذَّبِينَ ٢١٣ |
| 214. ನಿಮ್ಮ ಹತ್ತಿರದ ಸಂಬಂಧಿಕರಿಗೆ ಎಚ್ಚರಿಕೆ ನೀಡಿರಿ. | وَأَنذِرۡ عَشِيرَتَكَ ٱلۡأَقۡرَبِينَ ٢١٤ |
| 215. ನಿಮ್ಮನ್ನು ಅನುಸರಿಸಿದ ಸತ್ಯವಿಶ್ವಾಸಿಗಳಿಗೆ ನಿಮ್ಮ ರೆಕ್ಕೆಯನ್ನು ತಗ್ಗಿಸಿಕೊಡಿ (ಅವರೊಡನೆ ಸೌಮ್ಯವಾಗಿ ವರ್ತಿಸಿ). | وَٱخۡفِضۡ جَنَاحَكَ لِمَنِ ٱتَّبَعَكَ مِنَ ٱلۡمُؤۡمِنِينَ ٢١٥ |
| 216. ಅವರು ನಿಮ್ಮ ಮಾತನ್ನು ಕೇಳದಿದ್ದರೆ, ಹೇಳಿರಿ: “ನೀವು ಮಾಡುವ ಕರ್ಮಗಳಿಗೆ ನಾನು ಹೊಣೆಯಲ್ಲ.” | فَإِنۡ عَصَوۡكَ فَقُلۡ إِنِّي بَرِيٓءٞ مِّمَّا تَعۡمَلُونَ ٢١٦ |
| 217. ಪ್ರಬಲನು ಮತ್ತು ದಯೆ ತೋರುವವನಲ್ಲಿ (ಅಲ್ಲಾಹನಲ್ಲಿ) ಭರವಸೆಯಿಡಿ. | وَتَوَكَّلۡ عَلَى ٱلۡعَزِيزِ ٱلرَّحِيمِ ٢١٧ |
| 218. ಅವನು ಯಾರೆಂದರೆ, ನೀವು ನಿಲ್ಲುವಾಗ ನಿಮ್ಮನ್ನು ನೋಡುವವನು. | ٱلَّذِي يَرَىٰكَ حِينَ تَقُومُ ٢١٨ |
| 219. ಸಾಷ್ಟಾಂಗ ಮಾಡುವವರ ಜೊತೆಗಿನ ತಮ್ಮ ಚಲನವಲನಗಳನ್ನೂ ಕೂಡ. | وَتَقَلُّبَكَ فِي ٱلسَّٰجِدِينَ ٢١٩ |
| 220. ನಿಶ್ಚಯವಾಗಿಯೂ ಅವನು ಎಲ್ಲವನ್ನೂ ಕೇಳುವವನು ಮತ್ತು ಸರ್ವಜ್ಞನಾಗಿದ್ದಾನೆ. | إِنَّهُۥ هُوَ ٱلسَّمِيعُ ٱلۡعَلِيمُ ٢٢٠ |
| 221. ಶೈತಾನರು ಯಾರ ಮೇಲೆ ಇಳಿಯುತ್ತಾರೆಂದು ನಾನು ನಿಮಗೆ ತಿಳಿಸಿಕೊಡಲೇ? | هَلۡ أُنَبِّئُكُمۡ عَلَىٰ مَن تَنَزَّلُ ٱلشَّيَٰطِينُ ٢٢١ |
| 222. ಪ್ರತಿಯೊಬ್ಬ ಸುಳ್ಳುಗಾರ ಪಾಪಿಯ ಮೇಲೆ ಅವರು ಇಳಿಯುತ್ತಾರೆ. | تَنَزَّلُ عَلَىٰ كُلِّ أَفَّاكٍ أَثِيمٖ ٢٢٢ |

223. ಅವರು ಕೇಳಿದ್ದೆಲ್ಲವನ್ನೂ ತಲುಪಿಸುತ್ತಾರೆ. ಅವರಲ್ಲಿ ಹೆಚ್ಚಿನವರು ಸುಳ್ಳರಾಗಿದ್ದಾರೆ.

يُلْقُونَ ٱلسَّمْعَ وَأَكْثَرُهُمْ كَـٰذِبُونَ ﴿٢٢٣﴾

224. ಕವಿಗಳನ್ನು ದುರ್ಮಾರ್ಗಿಗಳು ಹಿಂಬಾಲಿಸುತ್ತಾರೆ.

وَٱلشُّعَرَآءُ يَتَّبِعُهُمُ ٱلْغَاوُۥنَ ﴿٢٢٤﴾

225. ಅವರು (ಕವಿಗಳು) ಎಲ್ಲ ಕಣಿವೆಗಳಲ್ಲೂ ವಿಹರಿಸುವುದನ್ನು ನೀವು ನೋಡಿಲ್ಲವೇ?

أَلَمْ تَرَ أَنَّهُمْ فِى كُلِّ وَادٍ يَهِيمُونَ ﴿٢٢٥﴾

226. ಅವರು ಮಾಡದ ಕೆಲಸಗಳನ್ನು ಅವರು ಹೇಳುತ್ತಾರೆ.

وَأَنَّهُمْ يَقُولُونَ مَا لَا يَفْعَلُونَ ﴿٢٢٦﴾

227. ಆದರೆ ಸತ್ಯವಿಶ್ವಾಸಿಗಳು, ಸತ್ಕರ್ಮವೆಸಗಿದವರು, ಅಲ್ಲಾಹನನ್ನು ಅತ್ಯಧಿಕ ಸ್ಮರಿಸುವವರು, ಮರ್ದನಕ್ಕೊಳಗಾದ ಬಳಿಕ ಪ್ರತೀಕಾರ ಪಡೆಯುವವರು ಇದರಿಂದ ಹೊರತಾಗಿದ್ದಾರೆ. ಅಕ್ರಮವೆಸ-ಗಿದವರು ಸದ್ಯವೇ ಅವರು ಯಾವ ಸ್ಥಳಕ್ಕೆ ಮರಳಲಿದ್ದಾರೆಂದು ತಿಳಿದುಕೊಳ್ಳುವರು.

إِلَّا ٱلَّذِينَ ءَامَنُوا۟ وَعَمِلُوا۟ ٱلصَّـٰلِحَـٰتِ وَذَكَرُوا۟ ٱللَّهَ كَثِيرًا وَٱنتَصَرُوا۟ مِنۢ بَعْدِ مَا ظُلِمُوا۟ ۗ وَسَيَعْلَمُ ٱلَّذِينَ ظَلَمُوٓا۟ أَىَّ مُنقَلَبٍ يَنقَلِبُونَ ﴿٢٢٧﴾

## 27. ಅನ್ನಮ್ಲ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسْمِ ٱللَّهِ ٱلرَّحْمَـٰنِ ٱلرَّحِيمِ

1. ತ್ವಾ ಸೀನ್. ಇವು ಕುರ್‌ಆನ್‌ನ—ಸ್ಪಷ್ಟ ಗ್ರಂಥದ ವಚನಗಳಾಗಿವೆ.

طسٓ ۚ تِلْكَ ءَايَـٰتُ ٱلْقُرْءَانِ وَكِتَابٍ مُّبِينٍ ﴿١﴾

2. ಇದು ಸತ್ಯವಿಶ್ವಾಸಿಗಳಿಗೆ ಸನ್ಮಾರ್ಗದರ್ಶಿ ಮತ್ತು ಸುವಾರ್ತೆಯಾಗಿದೆ.

هُدًى وَبُشْرَىٰ لِلْمُؤْمِنِينَ ﴿٢﴾

3. ಅವರು (ಸತ್ಯವಿಶ್ವಾಸಿಗಳು) ಯಾರೆಂದರೆ, ನಮಾಝನ್ನು ಸಂಸ್ಥಾಪಿಸುವವರು, ಝಕಾತ್ ನೀಡುವವರು ಮತ್ತು ಪರಲೋಕದಲ್ಲಿ ದೃಢವಿಶ್ವಾಸವಿಡುವವರು.

ٱلَّذِينَ يُقِيمُونَ ٱلصَّلَوٰةَ وَيُؤْتُونَ ٱلزَّكَوٰةَ وَهُم بِٱلْـَٔاخِرَةِ هُمْ يُوقِنُونَ ﴿٣﴾

4. ನಿಶ್ಚಯವಾಗಿಯೂ, ಪರಲೋಕದಲ್ಲಿ ವಿಶ್ವಾಸವಿಡದವರಿಗೆ ನಾವು ಅವರ ಕರ್ಮಗಳನ್ನು ಅಲಂಕರಿಸಿ ಕೊಟ್ಟಿದ್ದೇವೆ. ಆದ್ದರಿಂದ ಅವರು ಅಂಧವಾಗಿ ವಿಹರಿಸುತ್ತಿದ್ದಾರೆ.

إِنَّ ٱلَّذِينَ لَا يُؤْمِنُونَ بِٱلْـَٔاخِرَةِ زَيَّنَّا لَهُمْ أَعْمَـٰلَهُمْ فَهُمْ يَعْمَهُونَ ﴿٤﴾

5. ಅವರಿಗೆ ಅತ್ಯಂತ ಕೆಟ್ಟ ಶಿಕ್ಷೆಯಿದೆ. ಅವರು ಪರಲೋಕದಲ್ಲಿ ಅತ್ಯಧಿಕ ನಾಶ-ನಷ್ಟಕ್ಕೆ ಗುರಿಯಾಗುತ್ತಾರೆ.

أُو۟لَـٰٓئِكَ ٱلَّذِينَ لَهُمْ سُوٓءُ ٱلْعَذَابِ وَهُمْ فِى ٱلْـَٔاخِرَةِ هُمُ ٱلْأَخْسَرُونَ ﴿٥﴾

6. ನಿಶ್ಚಯವಾಗಿಯೂ ನಿಮಗೆ ಈ ಕುರ್‌ಆನನ್ನು ವಿವೇಕಪೂರ್ಣನು ಮತ್ತು ಸರ್ವಜ್ಞನಾದ ಅಲ್ಲಾಹನ ಕಡೆಯಿಂದ ನೀಡಲಾಗುತ್ತಿದೆ.

وَإِنَّكَ لَتُلَقَّى ٱلْقُرْءَانَ مِن لَّدُنْ حَكِيمٍ عَلِيمٍ ﴿٦﴾

7. ಮೂಸಾ ತಮ್ಮ ಕುಟುಂಬದೊಂದಿಗೆ ಹೇಳಿದ ಸಂದರ್ಭ: “ನನಗೆ

إِذْ قَالَ مُوسَىٰ لِأَهْلِهِۦٓ إِنِّىٓ ءَانَسْتُ نَارًا

(ದೂರದಲ್ಲಿ) ಬೆಂಕಿ ಕಾಣುತ್ತಿದೆ. ನಾನು ಅಲ್ಲಿಂದ ಏನಾದರೂ ಸುದ್ದಿಯನ್ನು ತರುತ್ತೇನೆ ಅಥವಾ ಏನಾದರೂ ದೀವಟಿಗೆಯನ್ನು ಉರಿಸಿಕೊಂಡು ಬರುತ್ತೇನೆ. ಅದರಿಂದ ನಿಮಗೆ ಚಳಿ ಕಾಯಿಸಬಹುದು.”

سَـَٔاتِيكُم مِّنۡهَا بِخَبَرٍ أَوۡ ءَاتِيكُم بِشِهَابٖ قَبَسٖ لَّعَلَّكُمۡ تَصۡطَلُونَ ٧

---

8. ಅವರು ಅದರ ಬಳಿಗೆ ಬಂದಾಗ, ಹೀಗೊಂದು ವಾಣಿ ಕೇಳಿಸಿತು: “ಬೆಂಕಿಯ ಬಳಿಯಿರುವವರು ಮತ್ತು ಅದರ ಪರಿಸರದಲ್ಲಿರುವವರು ಸಮೃದ್ಧರಾಗಿದ್ದಾರೆ. ಸರ್ವಲೋಕಗಳ ಪರಿಪಾಲಕನಾದ ಅಲ್ಲಾಹು ಮಹಾ ಪರಿಶುದ್ಧನಾಗಿದ್ದಾನೆ.

فَلَمَّا جَآءَهَا نُودِيَ أَنۢ بُورِكَ مَن فِي ٱلنَّارِ وَمَنۡ حَوۡلَهَا وَسُبۡحَٰنَ ٱللَّهِ رَبِّ ٱلۡعَٰلَمِينَ ٨

---

9. ಓ ಮೂಸಾ! ಖಂಡಿತವಾಗಿಯೂ ನಾನು ಪ್ರಬಲನು ಮತ್ತು ವಿವೇಕಪೂರ್ಣನಾದ ಅಲ್ಲಾಹನಾಗಿದ್ದೇನೆ.”

يَٰمُوسَىٰٓ إِنَّهُۥٓ أَنَا ٱللَّهُ ٱلۡعَزِيزُ ٱلۡحَكِيمُ ٩

---

10. “ನೀವು ನಿಮ್ಮ ಕೋಲನ್ನು ಎಸೆಯಿರಿ.” ಆಗ ಅದೊಂದು ಸರ್ಪವೋ ಎಂಬಂತೆ ವಿಲಿವಿಲಿ ಒದ್ದಾಡುವುದನ್ನು ಕಂಡಾಗ, ಮೂಸಾ (ಭಯದಿಂದ) ಹಿಂದೆ ತಿರುಗಿ ಓಡತೊಡಗಿದರು. ಅವರು ತಿರುಗಿ ನೋಡಲೇ ಇಲ್ಲ. (ಅಲ್ಲಾಹು ಹೇಳಿದನು): “ಓ ಮೂಸಾ! ಭಯಪಡಬೇಡಿ. ನನ್ನ ಉಪಸ್ಥಿತಿಯಲ್ಲಿ ಸಂದೇಶವಾಹಕರುಗಳು ಭಯಪಡುವುದಿಲ್ಲ.

وَأَلۡقِ عَصَاكَۚ فَلَمَّا رَءَاهَا تَهۡتَزُّ كَأَنَّهَا جَآنّٞ وَلَّىٰ مُدۡبِرٗا وَلَمۡ يُعَقِّبۡۚ يَٰمُوسَىٰ لَا تَخَفۡ إِنِّي لَا يَخَافُ لَدَيَّ ٱلۡمُرۡسَلُونَ ١٠

---

11. ಆದರೆ ಯಾರಾದರೂ ಅಕ್ರಮವೆಸಗಿ, ನಂತರ ಆ ಕೆಡುಕನ್ನು ಅದರ ಹಿಂದೆಯೇ ಒಳಿತು ಮಾಡುವ ಮೂಲಕ ಬದಲಾಯಿಸಿದರೆ, ನಿಶ್ಚಯವಾಗಿಯೂ ನಾನು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದೇನೆ.

إِلَّا مَن ظَلَمَ ثُمَّ بَدَّلَ حُسۡنَۢا بَعۡدَ سُوٓءٖ فَإِنِّي غَفُورٞ رَّحِيمٞ ١١

---

12. ನೀವು ನಿಮ್ಮ ಕೈಯನ್ನು ನಿಮ್ಮ ಅಂಗಿಯಲ್ಲಿ ವಕ್ಷಕ್ಕೆ ತೂರಿಸಿರಿ. ಆಗ ಅದಕ್ಕೆ ಯಾವುದೇ ದೋಷವುಂಟಾಗದೆ ಅದು ಬೆಳ್ಳಗೆ ಹೊಳೆಯುತ್ತಾ ಹೊರಬರುತ್ತದೆ. ಇವು ಫರೋಹ ಮತ್ತು ಅವನ ಜನರಿಗಿರುವ ಒಂಬತ್ತು ದೃಷ್ಟಾಂತಗಳಲ್ಲಿ ಒಳಪಡುತ್ತವೆ. ನಿಶ್ಚಯವಾಗಿಯೂ ಅವರು ದುಷ್ಕರ್ಮಿಗಳಾದ ಜನರಾಗಿದ್ದಾರೆ.”

وَأَدۡخِلۡ يَدَكَ فِي جَيۡبِكَ تَخۡرُجۡ بَيۡضَآءَ مِنۡ غَيۡرِ سُوٓءٖۖ فِي تِسۡعِ ءَايَٰتٍ إِلَىٰ فِرۡعَوۡنَ وَقَوۡمِهِۦٓۚ إِنَّهُمۡ كَانُواْ قَوۡمٗا فَٰسِقِينَ ١٢

---

13. ಅವರ ಬಳಿಗೆ ಈ ಕಣ್ತೆರೆಸುವಂತಹ ದೃಷ್ಟಾಂತಗಳು ಬಂದಾಗ ಅವರು ಹೇಳಿದರು: “ಇದು ಸ್ಪಷ್ಟ ಮಾಟಗಾರಿಕೆಯಾಗಿದೆ.”

فَلَمَّا جَآءَتۡهُمۡ ءَايَٰتُنَا مُبۡصِرَةٗ قَالُواْ هَٰذَا سِحۡرٞ مُّبِينٞ ١٣

---

14. ಅವರ ಆಂತರ್ಯವು ಆ ದೃಷ್ಟಾಂತಗಳ ಬಗ್ಗೆ ದೃಢವಿಶ್ವಾಸವನ್ನು ಹೊಂದಿದ್ದರೂ ಸಹ ಅವರು ಅನ್ಯಾಯವಾಗಿ ಮತ್ತು ಅಹಂಕಾರದಿಂದ ಅವುಗಳನ್ನು ನಿಷೇಧಿಸಿದರು. ಆದ್ದರಿಂದ ಆ ಕಿಡಿಗೇಡಿಗಳ ಅಂತಿಮ ಫಲಿತಾಂಶವು ಹೇಗಿತ್ತೆಂದು ನೋಡಿ.

وَجَحَدُواْ بِهَا وَٱسۡتَيۡقَنَتۡهَآ أَنفُسُهُمۡ ظُلۡمٗا وَعُلُوّٗاۚ فَٱنظُرۡ كَيۡفَ كَانَ عَٰقِبَةُ ٱلۡمُفۡسِدِينَ ١٤

15. ನಾವು ದಾವೂದ್ ಮತ್ತು ಸುಲೈಮಾನರಿಗೆ ಜ್ಞಾನವನ್ನು ಕರುಣಿಸಿದೆವು. ಅವರಿಬ್ಬರು ಹೇಳಿದರು: "ಅಲ್ಲಾಹನಿಗೆ ಸರ್ವಸ್ತುತಿ. ಅವನ ಸತ್ಯವಿಶ್ವಾಸಿ ದಾಸರಲ್ಲಿ ಸೇರಿದ ಹೆಚ್ಚಿನವರಿಗಿಂತಲೂ ಅವನು ನಮಗೆ ಶ್ರೇಷ್ಠತೆಯನ್ನು ದಯಪಾಲಿಸಿದ್ದಾನೆ."

وَلَقَدۡ ءَاتَيۡنَا دَاوُۥدَ وَسُلَيۡمَٰنَ عِلۡمٗاۖ وَقَالَا
ٱلۡحَمۡدُ لِلَّهِ ٱلَّذِى فَضَّلَنَا عَلَىٰ كَثِيرٖ مِّنۡ عِبَادِهِ
ٱلۡمُؤۡمِنِينَ ١٥

16. ಸುಲೈಮಾನರು ದಾವೂದರ ಉತ್ತರಾಧಿಕಾರಿಯಾದರು. ಅವರು ಹೇಳಿದರು: "ಜನರೇ! ನಮಗೆ ಹಕ್ಕಿಗಳ ಭಾಷೆಯನ್ನು ಕಲಿಸಲಾಗಿದೆ. ನಮಗೆ ಎಲ್ಲಾ ಸವಲತ್ತುಗಳನ್ನೂ ನೀಡಲಾಗಿದೆ. ನಿಶ್ಚಯವಾಗಿಯೂ ಇದೇ ಅತ್ಯಂತ ಸ್ಪಷ್ಟ ಔದಾರ್ಯ."

وَوَرِثَ سُلَيۡمَٰنُ دَاوُۥدَۖ وَقَالَ يَٰٓأَيُّهَا ٱلنَّاسُ
عُلِّمۡنَا مَنطِقَ ٱلطَّيۡرِ وَأُوتِينَا مِن كُلِّ شَيۡءٍۖ إِنَّ
هَٰذَا لَهُوَ ٱلۡفَضۡلُ ٱلۡمُبِينُ ١٦

17. ಸುಲೈಮಾನರ ಮುಂದೆ ಜಿನ್ನ್, ಮನುಷ್ಯರು ಮತ್ತು ಹಕ್ಕಿಗಳು ಸೇರಿದ ಅವರ ಬೃಹತ್ ಸೈನ್ಯವನ್ನು ಒಟ್ಟುಗೂಡಿಸಲಾಯಿತು. ಅವರಲ್ಲಿ (ಪ್ರತಿಯೊಂದು ವರ್ಗವನ್ನು) ಬೇರೆ ಬೇರೆ ಸ್ಥಾನಗಳಲ್ಲಿ ನಿಲ್ಲಿಸಲಾಗಿದೆ.

وَحُشِرَ لِسُلَيۡمَٰنَ جُنُودُهُۥ مِنَ ٱلۡجِنِّ وَٱلۡإِنسِ
وَٱلطَّيۡرِ فَهُمۡ يُوزَعُونَ ١٧

18. ಅವರು ಇರುವೆಗಳ ಕಣಿವೆಯ ಬಳಿಗೆ ತಲುಪಿದಾಗ, ಒಂದು ಇರುವೆ ಹೇಳಿತು: "ಇರುವೆಗಳೇ! ನಿಮ್ಮ ಗೂಡುಗಳನ್ನು ಸೇರಿಕೊಳ್ಳಿ, ಸುಲೈಮಾನ್ ಮತ್ತು ಅವರ ಸೈನ್ಯಗಳು ಅವರಿಗೆ ತಿಳಿಯದಂತೆ ನಿಮ್ಮನ್ನು ತುಳಿಯುತ್ತಾ ಸಾಗದಿರಲಿ."

حَتَّىٰٓ إِذَآ أَتَوۡاْ عَلَىٰ وَادِ ٱلنَّمۡلِ قَالَتۡ نَمۡلَةٞ
يَٰٓأَيُّهَا ٱلنَّمۡلُ ٱدۡخُلُواْ مَسَٰكِنَكُمۡ لَا
يَحۡطِمَنَّكُمۡ سُلَيۡمَٰنُ وَجُنُودُهُۥ وَهُمۡ لَا
يَشۡعُرُونَ ١٨

19. ಆಗ ಅದರ ಮಾತು ಕೇಳಿ ಸುಲೈಮಾನ್ ಮುಗುಳ್ನಕ್ಕರು. ಅವರು ಹೇಳಿದರು: "ನನ್ನ ಪರಿಪಾಲಕನೇ! ನೀನು ನನಗೆ ಮತ್ತು ನನ್ನ ತಂದೆ-ತಾಯಿಗಳಿಗೆ ದಯಪಾಲಿಸಿದ ಅನುಗ್ರಹಗಳಿಗಾಗಿ ನಿನಗೆ ಆಭಾರಿಯಾಗಿರಲು ಮತ್ತು ನೀನು ಇಷ್ಟಪಡುವ ಸತ್ಕರ್ಮಗಳನ್ನು ಮಾಡಲು ನನಗೆ ಸೌಭಾಗ್ಯವನ್ನು ನೀಡು. ನಿನ್ನ ದಯೆಯಿಂದ ನನ್ನನ್ನು ನಿನ್ನ ನೀತಿವಂತ ದಾಸರಲ್ಲಿ ಸೇರಿಸು."

فَتَبَسَّمَ ضَاحِكٗا مِّن قَوۡلِهَا وَقَالَ رَبِّ أَوۡزِعۡنِىٓ
أَنۡ أَشۡكُرَ نِعۡمَتَكَ ٱلَّتِىٓ أَنۡعَمۡتَ عَلَىَّ وَعَلَىٰ
وَٰلِدَىَّ وَأَنۡ أَعۡمَلَ صَٰلِحٗا تَرۡضَىٰهُ وَأَدۡخِلۡنِى
بِرَحۡمَتِكَ فِى عِبَادِكَ ٱلصَّٰلِحِينَ ١٩

20. ಅವರು ಹಕ್ಕಿಗಳನ್ನು ತಪಾಸಣೆ ಮಾಡಿದರು. ನಂತರ ಹೇಳಿದರು: "ಇದೇನು ನನಗೆ ಹೂಪೂ ಹಕ್ಕಿ ಕಾಣಿಸುತ್ತಿಲ್ಲ? ಅದು ಇಂದು ಗೈರು ಹಾಜರಿಯಾಗಿದೆಯೇ?

وَتَفَقَّدَ ٱلطَّيۡرَ فَقَالَ مَالِىَ لَآ أَرَى ٱلۡهُدۡهُدَ أَمۡ
كَانَ مِنَ ٱلۡغَآئِبِينَ ٢٠

21. ನಾನು ಅದಕ್ಕೆ ಕಠೋರ ಶಿಕ್ಷೆಯನ್ನು ನೀಡುವೆನು ಅಥವಾ ಅದನ್ನು ಕತ್ತು ಕೊಯ್ದು ಸಾಯಿಸುವೆನು. ಅನ್ಯಥಾ ಅದು ನನ್ನ ಬಳಿಗೆ (ಗೈರು ಹಾಜರಿಗೆ) ಸ್ಪಷ್ಟ ಸಾಕ್ಷ್ಯಾಧಾರವನ್ನು ತರಬೇಕು."

لَأُعَذِّبَنَّهُۥ عَذَابٗا شَدِيدًا أَوۡ لَأَاْذۡبَحَنَّهُۥٓ أَوۡ
لَيَأۡتِيَنِّى بِسُلۡطَٰنٖ مُّبِينٖ ٢١

22. ತುಸು ಹೊತ್ತಿನಲ್ಲೇ ಹೂಪೂ ಹಕ್ಕಿ ಬಂದು ಹೇಳಿತು: "ನಿಮಗೆ ಸೂಕ್ಷ್ಮವಾಗಿ ತಿಳಿಯಲು ಸಾಧ್ಯವಾಗದ ಒಂದು ವಿಷಯವನ್ನು

فَمَكَثَ غَيۡرَ بَعِيدٖ فَقَالَ أَحَطتُ بِمَا لَمۡ تُحِطۡ
بِهِۦ وَجِئۡتُكَ مِن سَبَإِۭ بِنَبَإٖ يَقِينٍ ٢٢

ನಾನು ತಿಳಿದಿದ್ದೇನೆ. ನಾನು ಸಬಾ[1] ದೇಶದಿಂದ ಒಂದು ಖಚಿತ ಮಾಹಿತಿಯೊಂದಿಗೆ ಬಂದಿದ್ದೇನೆ.

---

23. ನಾನು ನೋಡಿದಂತೆ ಒಬ್ಬ ಮಹಿಳೆ ಅವರನ್ನು ಆಳುತ್ತಿದ್ದಾಳೆ. ಅವಳಿಗೆ ಎಲ್ಲಾ ಸವಲತ್ತುಗಳನ್ನೂ ನೀಡಲಾಗಿದೆ. ಆಕೆಗೆ ಮಹಾ ಸಿಂಹಾಸನವಿದೆ.

إِنِّي وَجَدتُّ ٱمۡرَأَةٗ تَمۡلِكُهُمۡ وَأُوتِيَتۡ مِن كُلِّ شَيۡءٖ وَلَهَا عَرۡشٌ عَظِيمٞ ﴿٢٣﴾

---

24. ನಾನು ನೋಡಿದಂತೆ ಅವಳು ಮತ್ತು ಅವಳ ಜನರು ಅಲ್ಲಾಹನನ್ನು ಬಿಟ್ಟು ಸೂರ್ಯನಿಗೆ ಸಾಷ್ಟಾಂಗ ಮಾಡುತ್ತಾರೆ. ಶೈತಾನನು ಅವರಿಗೆ ಅವರ ಕೃತ್ಯಗಳನ್ನು ಅಲಂಕರಿಸಿಕೊಟ್ಟು ಅವರನ್ನು ಸನ್ಮಾರ್ಗದಿಂದ ದೂರವಿರಿಸಿದ್ದಾನೆ. ಆದ್ದರಿಂದ ಅವರಿಗೆ ಸನ್ಮಾರ್ಗವನ್ನು ಪಡೆಯಲು ಸಾಧ್ಯವಾಗುತ್ತಿಲ್ಲ.

وَجَدتُّهَا وَقَوۡمَهَا يَسۡجُدُونَ لِلشَّمۡسِ مِن دُونِ ٱللَّهِ وَزَيَّنَ لَهُمُ ٱلشَّيۡطَٰنُ أَعۡمَٰلَهُمۡ فَصَدَّهُمۡ عَنِ ٱلسَّبِيلِ فَهُمۡ لَا يَهۡتَدُونَ ﴿٢٤﴾

---

25. ಭೂಮ್ಯಾಕಾಶಗಳಲ್ಲಿ ನಿಗೂಢವಾಗಿರುವುದನ್ನು ಹೊರತರುವವನು ಮತ್ತು ನೀವು ರಹಸ್ಯವಾಗಿಡುವು-ದನ್ನು ಹಾಗೂ ಬಹಿರಂಗಪಡಿಸುವುದನ್ನು ತಿಳಿಯುವವನಾದ ಅಲ್ಲಾಹನಿಗೆ ಸಾಷ್ಟಾಂಗ ಮಾಡದಂತೆ (ಶೈತಾನನು ಅವರನ್ನು ತಡೆದಿದ್ದಾನೆ).

أَلَّا يَسۡجُدُواْۤ لِلَّهِ ٱلَّذِي يُخۡرِجُ ٱلۡخَبۡءَ فِي ٱلسَّمَٰوَٰتِ وَٱلۡأَرۡضِ وَيَعۡلَمُ مَا تُخۡفُونَ وَمَا تُعۡلِنُونَ ﴿٢٥﴾

---

26. ಅಲ್ಲಾಹನ ಹೊರತು ಆರಾಧನೆಗೆ ಅರ್ಹರಾದ ಬೇರೆ ದೇವರಿಲ್ಲ. ಅವನು ಮಹಾ ಸಿಂಹಾಸನದ ಪರಿಪಾಲಕನಾಗಿದ್ದಾನೆ."

ٱللَّهُ لَآ إِلَٰهَ إِلَّا هُوَ رَبُّ ٱلۡعَرۡشِ ٱلۡعَظِيمِ ۩ ﴿٢٦﴾

---

27. ಸುಲೈಮಾನ್ ಹೇಳಿದರು: "ನೀನು ಹೇಳಿದ್ದು ಸತ್ಯವೋ ಅಥವಾ ನೀನು ಸುಳ್ಳು ಹೇಳುವವರಲ್ಲಿ ಸೇರಿದ್ದೀಯೋ ಎಂದು ನಾವು ನೋಡುವೆವು.

۞ قَالَ سَنَنظُرُ أَصَدَقۡتَ أَمۡ كُنتَ مِنَ ٱلۡكَٰذِبِينَ ﴿٢٧﴾

---

28. ನನ್ನ ಈ ಓಲೆಯೊಂದಿಗೆ ಹೊರಡು ಮತ್ತು ಅದನ್ನು ಅವರ ಮುಂದೆ ಎಸೆದು ಬಿಡು. ನಂತರ ಅವರಿಂದ ದೂರ ಸರಿದು, ಅವರು ಏನು ಉತ್ತರ ನೀಡುತ್ತಾರೆಂದು ನೋಡು."

ٱذۡهَب بِّكِتَٰبِي هَٰذَا فَأَلۡقِهۡ إِلَيۡهِمۡ ثُمَّ تَوَلَّ عَنۡهُمۡ فَٱنظُرۡ مَاذَا يَرۡجِعُونَ ﴿٢٨﴾

---

29. ರಾಣಿ ಹೇಳಿದಳು: "ಸರದಾರರೇ! ನೋಡಿ! ನನಗೊಂದು ಉದಾತ್ತ ಓಲೆಯನ್ನು ಕಳುಹಿಸಲಾಗಿದೆ.

قَالَتۡ يَٰٓأَيُّهَا ٱلۡمَلَؤُاْ إِنِّيٓ أُلۡقِيَ إِلَيَّ كِتَٰبٞ كَرِيمٌ ﴿٢٩﴾

---

30. ಅದು ಸುಲೈಮಾನರ ಕಡೆಯಿಂದ ಬಂದಿದೆ. ಅದರಲ್ಲಿ "ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ.

إِنَّهُۥ مِن سُلَيۡمَٰنَ وَإِنَّهُۥ بِسۡمِ ٱللَّهِ ٱلرَّحۡمَٰنِ ٱلرَّحِيمِ ﴿٣٠﴾

---

31. ನನ್ನ ಮುಂದೆ ಅಹಂಕಾರದಿಂದ ವರ್ತಿಸದೆ, ಮುಸಲ್ಮಾನರಾಗಿ

أَلَّا تَعۡلُواْ عَلَيَّ وَأۡتُونِي مُسۡلِمِينَ ﴿٣١﴾

---

[1] ಸಬಾ ಎಂದರೆ ಪುರಾತನ ಯಮನ್ ದೇಶದ ಒಂದು ಸಾಮ್ರಾಜ್ಯ. ಈ ಸಾಮ್ರಾಜ್ಯವನ್ನು ಬಿಲ್ಕೀಸ್ ಎಂಬ ಹೆಸರಿನ ರಾಣಿ ಆಳುತ್ತಿದ್ದಳು.

ನನ್ನ ಬಳಿಗೆ ಬನ್ನಿ” ಎಂದು ಬರೆಯಲಾಗಿದೆ.”

32. ರಾಣಿ ಕೇಳಿದಳು: “ಸರದಾರರೇ! ನನ್ನ ಈ ವಿಷಯದಲ್ಲಿ ನನಗೆ ಸಲಹೆ ನೀಡಿರಿ. ನೀವು ನನ್ನ ಬಳಿ ಹಾಜರಾಗಿ (ನಿಮ್ಮ ಸಲಹೆಯನ್ನು ಕೇಳಿದ ನಂತರವೇ) ಹೊರತು ನಾನು ಯಾವುದೇ ವಿಷಯವನ್ನೂ ಅಂತಿಮವಾಗಿ ತೀರ್ಮಾನಿಸುವುದಿಲ್ಲ.”

قَالَتْ يَٰٓأَيُّهَا ٱلْمَلَؤُا۟ أَفْتُونِى فِىٓ أَمْرِى مَا كُنتُ قَاطِعَةً أَمْرًا حَتَّىٰ تَشْهَدُونِ ﴿٣٢﴾

33. ಸರದಾರರು ಹೇಳಿದರು: “ನಾವು ಶಕ್ತಿಶಾಲಿಗಳು ಮತ್ತು ಪ್ರಬಲ ಸೈನ್ಯವನ್ನು ಹೊಂದಿರುವವರು. ಆದರೆ ಆಜ್ಞೆ ನೀಡುವ ಅಧಿಕಾರ ನಿಮ್ಮ ಕೈಯಲ್ಲಿದೆ. ನಮಗೆ ಏನು ಆಜ್ಞೆ ನೀಡಬೇಕೆಂದು ನೀವು ಚೆನ್ನಾಗಿ ಆಲೋಚಿಸಿರಿ.”

قَالُوا۟ نَحْنُ أُو۟لُوا۟ قُوَّةٍ وَأُو۟لُوا۟ بَأْسٍ شَدِيدٍ وَٱلْأَمْرُ إِلَيْكِ فَٱنظُرِى مَاذَا تَأْمُرِينَ ﴿٣٣﴾

34. ರಾಣಿ ಹೇಳಿದಳು: “ನಿಶ್ಚಯವಾಗಿಯೂ, ಸಾಮ್ರಾಜ್ಯಶಾಹಿಗಳು ಯಾವುದೇ ಒಂದು ಊರನ್ನು ಪ್ರವೇಶಿಸಿದರೆ, ಅದನ್ನು ನಾಶ ಮಾಡುತ್ತಾರೆ ಮತ್ತು ಅಲ್ಲಿನ ಪ್ರತಿಷ್ಠಿತರನ್ನು ಅಪಮಾನಿತರನ್ನಾಗಿ ಮಾಡುತ್ತಾರೆ. ಇವರು ಕೂಡ ಹೀಗೆಯೇ ಮಾಡುವರು.

قَالَتْ إِنَّ ٱلْمُلُوكَ إِذَا دَخَلُوا۟ قَرْيَةً أَفْسَدُوهَا وَجَعَلُوٓا۟ أَعِزَّةَ أَهْلِهَآ أَذِلَّةً ۖ وَكَذَٰلِكَ يَفْعَلُونَ ﴿٣٤﴾

35. ಆದ್ದರಿಂದ, ನಾನು ಅವರಿಗೆ ಒಂದು ಉಡುಗೊರೆಯನ್ನು ಕಳುಹಿಸಿ ಕೊಡುತ್ತೇನೆ. ನಂತರ ದೂತರು ಯಾವ ಸುದ್ದಿಯೊಂದಿಗೆ ಮರಳಿ ಬರುತ್ತಾರೆಂದು ನೋಡುತ್ತೇನೆ.”

وَإِنِّى مُرْسِلَةٌ إِلَيْهِم بِهَدِيَّةٍ فَنَاظِرَةٌۢ بِمَ يَرْجِعُ ٱلْمُرْسَلُونَ ﴿٣٥﴾

36. ಆ ದೂತರು ಸುಲೈಮಾನರ ಬಳಿಗೆ ಬಂದಾಗ ಅವರು ಹೇಳಿದರು: “ನೀವು ನಿಮ್ಮ ಸಂಪತ್ತಿನ ಮೂಲಕ ನನಗೆ ಸಹಾಯ ಮಾಡಲು ಬಯಸುತ್ತೀರಾ? ಆದರೆ ನಿಮಗೆ ನೀಡಿರುವುದಕ್ಕಿಂತಲೂ ಶ್ರೇಷ್ಠ-ವಾದುದನ್ನು ಅಲ್ಲಾಹು ನನಗೆ ನೀಡಿದ್ದಾನೆ. ಆದರೆ ನೀವಂತೂ ನಿಮ್ಮ ಉಡುಗೊರೆಯ ಬಗ್ಗೆ ಹೆಮ್ಮೆ ಪಡುತ್ತೀರಿ.

فَلَمَّا جَآءَ سُلَيْمَٰنَ قَالَ أَتُمِدُّونَنِ بِمَالٍ فَمَآ ءَاتَىٰنِۦَ ٱللَّهُ خَيْرٌ مِّمَّآ ءَاتَىٰكُم ۚ بَلْ أَنتُم بِهَدِيَّتِكُمْ تَفْرَحُونَ ﴿٣٦﴾

37. ನೀವು ಅವರ (ನಿಮ್ಮ ಆಡಳಿತಗಾರರ) ಬಳಿಗೆ ವಾಪಸು ಹೋಗಿರಿ. ನಿಶ್ಚಯವಾಗಿಯೂ ಅವರಿಗೆ ಎದುರಿಸಲು ಸಾಧ್ಯವಾಗದ ಬೃಹತ್ ಸೈನ್ಯಗಳೊಂದಿಗೆ ನಾವು ಅವರ ಬಳಿಗೆ ಬರುವೆವು. ನಂತರ ಅವರನ್ನು ಅತ್ಯಂತ ಹೀನ ಸ್ಥಿತಿಯಲ್ಲಿ ಅವಮಾನದೊಂದಿಗೆ ಅಲ್ಲಿಂದ ಓಡಿಸುವೆವು.”

ٱرْجِعْ إِلَيْهِمْ فَلَنَأْتِيَنَّهُم بِجُنُودٍ لَّا قِبَلَ لَهُم بِهَا وَلَنُخْرِجَنَّهُم مِّنْهَآ أَذِلَّةً وَهُمْ صَٰغِرُونَ ﴿٣٧﴾

38. ಸುಲೈಮಾನ್ ಹೇಳಿದರು: “ಓ ಸರದಾರರೇ! ಅವರು ನನ್ನ ಬಳಿಗೆ ಮುಸಲ್ಮಾನರಾಗಿ ಬರುವುದಕ್ಕೆ ಮೊದಲೇ ಅವಳ ಸಿಂಹಾಸನವನ್ನು ಯಾರು ನನಗೆ ತಂದು ಕೊಡುತ್ತೀರಿ?”

قَالَ يَٰٓأَيُّهَا ٱلْمَلَؤُا۟ أَيُّكُمْ يَأْتِينِى بِعَرْشِهَا قَبْلَ أَن يَأْتُونِى مُسْلِمِينَ ﴿٣٨﴾

39. ಒಬ್ಬ ಬಲಿಷ್ಠ ರೂಪದ ಜಿನ್ನ್ ಹೇಳಿದನು: “ನೀವು ನಿಮ್ಮ ಸ್ಥಾನದಿಂದ ಎದ್ದೇಳುವುದಕ್ಕೆ ಮೊದಲೇ ನಾನು ಅದನ್ನು

قَالَ عِفْرِيتٌ مِّنَ ٱلْجِنِّ أَنَا۠ ءَاتِيكَ بِهِۦ قَبْلَ أَن تَقُومَ مِن مَّقَامِكَ ۖ وَإِنِّى عَلَيْهِ لَقَوِىٌّ أَمِينٌ ﴿٣٩﴾

ತರುವೆನು. ನಿಜಕ್ಕೂ ನನಗೆ ಅದನ್ನು ಮಾಡುವ ಶಕ್ತಿಯಿದೆ ಮತ್ತು ನಾನು ವಿಶ್ವಾಸಯೋಗ್ಯನಾಗಿದ್ದೇನೆ."

---

**40.** ಗ್ರಂಥದ ಜ್ಞಾನವಿರುವ ಒಬ್ಬ ವ್ಯಕ್ತಿ ಎದ್ದು ನಿಂತು ಹೇಳಿದರು: "ನೀವು ಕಣ್ಣೆವೆಯಿಕ್ಕುವುದಕ್ಕೆ ಮೊದಲೇ ನಾನು ಅದನ್ನು ತರುವೆನು." ಆ ಸಿಂಹಾಸನವು ತನ್ನ ಮುಂದೆ ನಿಂತಿರುವುದನ್ನು ಕಂಡಾಗ ಸುಲೈಮಾನ್ ಹೇಳಿದರು: "ಇದು ನನ್ನ ಪರಿಪಾಲಕನ (ಅಲ್ಲಾಹನ) ಔದಾರ್ಯದಲ್ಲಿ ಸೇರಿದ್ದಾಗಿದೆ. ನಾನು ಕೃತಜ್ಞ-ನಾಗುತ್ತೇನೋ ಅಥವಾ ಕೃತಘ್ನನಾಗುತ್ತೇನೋ ಎಂದು ಪರೀಕ್ಷಿಸುವುದಕ್ಕಾಗಿ. ಯಾರು ಕೃತಜ್ಞನಾಗುತ್ತಾನೋ—ಅವನು ಕೃತಜ್ಞನಾಗುವುದು ಸ್ವತಃ ಅವನ ಒಳಿತಿಗೇ ಆಗಿದೆ. ಯಾರಾದರೂ ಕೃತಘ್ನನಾಗುವುದಾದರೆ—ನಿಶ್ಚಯವಾಗಿಯೂ ನನ್ನ ಪರಿಪಾಲಕನು ನಿರಪೇಕ್ಷನು ಮತ್ತು ಪರಮ ಉದಾರಿಯಾಗಿದ್ದಾನೆ."

قَالَ ٱلَّذِى عِندَهُۥ عِلْمٌ مِّنَ ٱلْكِتَٰبِ أَنَا۠ ءَاتِيكَ بِهِۦ قَبْلَ أَن يَرْتَدَّ إِلَيْكَ طَرْفُكَ ۚ فَلَمَّا رَءَاهُ مُسْتَقِرًّا عِندَهُۥ قَالَ هَٰذَا مِن فَضْلِ رَبِّى لِيَبْلُوَنِىٓ ءَأَشْكُرُ أَمْ أَكْفُرُ ۖ وَمَن شَكَرَ فَإِنَّمَا يَشْكُرُ لِنَفْسِهِۦ ۖ وَمَن كَفَرَ فَإِنَّ رَبِّى غَنِىٌّ كَرِيمٌ ﴿٤٠﴾

---

**41.** ಸುಲೈಮಾನ್ ಹೇಳಿದರು: "ಅವಳ ಸಿಂಹಾಸನವನ್ನು (ಅವಳಿಗೆ ಗುರುತಿಸಲಾಗದಂತೆ) ವಿರೂಪಗೊಳಿಸಿರಿ. ಅವಳು ಸತ್ಯವನ್ನು ಕಂಡುಕೊಳ್ಳುತ್ತಾಳೋ ಅಥವಾ ಸತ್ಯವನ್ನು ಕಂಡುಕೊಳ್ಳಲು ಸಾಧ್ಯವಾಗದವರಲ್ಲಿ ಸೇರುತ್ತಾಳೋ ಎಂದು ನೋಡೋಣ."

قَالَ نَكِّرُوا۟ لَهَا عَرْشَهَا نَنظُرْ أَتَهْتَدِىٓ أَمْ تَكُونُ مِنَ ٱلَّذِينَ لَا يَهْتَدُونَ ﴿٤١﴾

---

**42.** ನಂತರ ಅವಳು ಬಂದಾಗ ಕೇಳಲಾಯಿತು: "ನಿಮ್ಮ ಸಿಂಹಾಸನ ಇದೇ ರೀತಿಯಿದೆಯೇ?" ಅವಳು ಹೇಳಿದಳು: "ಇದು ಅದೇ ಆಗಿರುವಂತೆ ತೋರುತ್ತಿದೆ." ನಮಗೆ ಇದಕ್ಕಿಂತ ಮೊದಲೇ ಜ್ಞಾನ ನೀಡಲಾಗಿದೆ ಮತ್ತು ನಾವು ಮುಸಲ್ಮಾನರಾಗಿದ್ದೇವೆ.

فَلَمَّا جَآءَتْ قِيلَ أَهَٰكَذَا عَرْشُكِ ۖ قَالَتْ كَأَنَّهُۥ هُوَ ۚ وَأُوتِينَا ٱلْعِلْمَ مِن قَبْلِهَا وَكُنَّا مُسْلِمِينَ ﴿٤٢﴾

---

**43.** ಅವಳು ಅಲ್ಲಾಹನನ್ನು ಬಿಟ್ಟು ಯಾರನ್ನು ಆರಾಧಿಸುತ್ತಿದ್ದಳೋ ಆ ದೇವರುಗಳು (ಅಲ್ಲಾಹನ ಆರಾಧನೆ ಮಾಡದಂತೆ) ಅವಳನ್ನು ತಡೆದಿದ್ದರು. ನಿಶ್ಚಯವಾಗಿಯೂ ಅವಳು ಸತ್ಯನಿಷೇಧಿಗಳಾದ ಜನರಲ್ಲಿ ಸೇರಿದ್ದಳು.

وَصَدَّهَا مَا كَانَت تَّعْبُدُ مِن دُونِ ٱللَّهِ ۖ إِنَّهَا كَانَتْ مِن قَوْمٍ كَٰفِرِينَ ﴿٤٣﴾

---

**44.** ಅವಳೊಡನೆ ಹೇಳಲಾಯಿತು: "ಅರಮನೆಯನ್ನು ಪ್ರವೇಶಿಸಿರಿ." ಅವಳು ಅದನ್ನು ನೋಡಿದಾಗ ಅದೊಂದು ಕೊಳವಾಗಿರಬೇಕೆಂದು ಭಾವಿಸಿ ತನ್ನ ಕಣಕಾಲುಗಳಿಂದ ಬಟ್ಟೆಯನ್ನು ಎತ್ತಿದಳು. ಸುಲೈಮಾನ್ ಹೇಳಿದರು: "ಇದು ಸ್ಫಟಿಕವನ್ನು ಹಾಸಿ ಹೊಳೆಯುವಂತೆ ಮಾಡಿದ ಅರಮನೆಯಾಗಿದೆ." ಅವಳು ಹೇಳಿದಳು: "ಓ ನನ್ನ ಪರಿಪಾಲಕನೇ! ನಾನು ಸ್ವತಃ ನನ್ನ ಮೇಲೆಯೇ

قِيلَ لَهَا ٱدْخُلِى ٱلصَّرْحَ ۖ فَلَمَّا رَأَتْهُ حَسِبَتْهُ لُجَّةً وَكَشَفَتْ عَن سَاقَيْهَا ۚ قَالَ إِنَّهُۥ صَرْحٌ مُّمَرَّدٌ مِّن قَوَارِيرَ ۗ قَالَتْ رَبِّ إِنِّى ظَلَمْتُ نَفْسِى وَأَسْلَمْتُ مَعَ سُلَيْمَٰنَ لِلَّهِ رَبِّ ٱلْعَٰلَمِينَ ﴿٤٤﴾

ಅನ್ಯಾಯವೆಸಗಿದ್ದೇನೆ. ನಾನು ಸುಲೈಮಾನರೊಂದಿಗೆ ಸರ್ವಲೋಕಗಳ ಪರಿಪಾಲಕನಾದ ಅಲ್ಲಾಹನಿಗೆ ಶರಣಾಗಿದ್ದೇನೆ.”

---

45. ನಾವು ಸಮೂದ್ ಗೋತ್ರಕ್ಕೆ ಅವರ ಸಹೋದರ ಸ್ವಾಲಿಹರನ್ನು ಕಳುಹಿಸಿದೆವು. ಅವರು ಜನರೊಡನೆ “ಅಲ್ಲಾಹನನ್ನು ಮಾತ್ರ ಆರಾಧಿಸಿರಿ” ಎಂದು ಹೇಳಿದರು. ಆಗ ಅವರು ಪರಸ್ಪರ ತರ್ಕಿಸುವ ಎರಡು ಗುಂಪುಗಳಾಗಿ ಮಾರ್ಪಟ್ಟರು.

وَلَقَدۡ أَرۡسَلۡنَآ إِلَىٰ ثَمُودَ أَخَاهُمۡ صَٰلِحًا أَنِ
ٱعۡبُدُواْ ٱللَّهَ فَإِذَا هُمۡ فَرِيقَانِ يَخۡتَصِمُونَ ﴿٤٥﴾

---

46. ಸ್ವಾಲಿಹ್ ಹೇಳಿದರು: “ನನ್ನ ಜನರೇ! ನೀವು ಒಳಿತು ಮಾಡುವುದಕ್ಕೆ ಮೊದಲು ಕೆಡುಕು ಮಾಡಲು ಏಕೆ ತ್ವರೆ ಮಾಡುತ್ತೀರಿ? ನೀವೇಕೆ ಅಲ್ಲಾಹನಲ್ಲಿ ಕ್ಷಮೆಯಾಚಿಸುವುದಿಲ್ಲ? ಅವನು ನಿಮಗೆ ದಯೆ ತೋರಬಹುದಲ್ಲವೇ.”

قَالَ يَٰقَوۡمِ لِمَ تَسۡتَعۡجِلُونَ بِٱلسَّيِّئَةِ قَبۡلَ
ٱلۡحَسَنَةِۖ لَوۡلَا تَسۡتَغۡفِرُونَ ٱللَّهَ لَعَلَّكُمۡ
تُرۡحَمُونَ ﴿٤٦﴾

---

47. ಅವರು ಹೇಳಿದರು: “ನೀನು ಮತ್ತು ನಿನ್ನ ಅನುಯಾಯಿಗಳು ನಮಗೆ ಅಪಶಕುನವಾಗಿದ್ದಾರೆ.” ಸ್ವಾಲಿಹ್ ಹೇಳಿದರು: “ನಿಮ್ಮ ಅಪಶಕುನವು ಅಲ್ಲಾಹನ ಬಳಿಯಿದೆ. ಅಲ್ಲ, ವಾಸ್ತವವಾಗಿ ನೀವು ಪರೀಕ್ಷೆಗೆ ತುತ್ತಾದ ಜನರಾಗಿದ್ದೀರಿ.”

قَالُواْ ٱطَّيَّرۡنَا بِكَ وَبِمَن مَّعَكَۚ قَالَ طَٰٓئِرُكُمۡ
عِندَ ٱللَّهِۖ بَلۡ أَنتُمۡ قَوۡمٞ تُفۡتَنُونَ ﴿٤٧﴾

---

48. ಆ ಊರಿನಲ್ಲಿ ಒಂಬತ್ತು ಮುಖಂಡರಿದ್ದರು. ಅವರು ಊರಿನಲ್ಲಿ ಕಿಡಿಗೇಡಿತನ ಮಾಡುತ್ತಿದ್ದರೇ ವಿನಾ ಒಳಿತು ಮಾಡುತ್ತಿರಲಿಲ್ಲ.

وَكَانَ فِي ٱلۡمَدِينَةِ تِسۡعَةُ رَهۡطٖ يُفۡسِدُونَ فِي
ٱلۡأَرۡضِ وَلَا يُصۡلِحُونَ ﴿٤٨﴾

---

49. ಆ ಮುಖಂಡರು ಪರಸ್ಪರ ಆಣೆ ಮಾಡುತ್ತಾ ಒಂದು ನಿರ್ಧಾರ ತೆಗೆದು ಹೇಳಿದರು: “ನಾವು ರಾತ್ರಿ ಸ್ವಾಲಿಹ್ ಮತ್ತು ಅವರ ಕುಟುಂಬದವರನ್ನು ಕೊಂದು ಬಿಡೋಣ. ನಂತರ ಅವರ ವಾರಸುದಾರರೊಡನೆ, ಇವನ ಕುಟುಂಬವ ಹತ್ಯೆಯಾಗುವಾಗ ನಾವು ಅಲ್ಲಿರಲಿಲ್ಲ. ನಾವು ಖಂಡಿತವಾಗಿಯೂ ಸತ್ಯವನ್ನೇ ಹೇಳುತ್ತಿದ್ದೇವೆ ಎಂದು ಹೇಳಿ ಬಿಡೋಣ.”

قَالُواْ تَقَاسَمُواْ بِٱللَّهِ لَنُبَيِّتَنَّهُۥ وَأَهۡلَهُۥ ثُمَّ
لَنَقُولَنَّ لِوَلِيِّهِۦ مَا شَهِدۡنَا مَهۡلِكَ أَهۡلِهِۦ وَإِنَّا
لَصَٰدِقُونَ ﴿٤٩﴾

---

50. ಅವರು ತಂತ್ರಗಾರಿಕೆ ಮಾಡಿದರು. ನಾವು ಕೂಡ ತಂತ್ರಗಾರಿಕೆ ಮಾಡಿದೆವು. ಅವರು ಅದನ್ನು ತಿಳಿಯಲೇ ಇಲ್ಲ.

وَمَكَرُواْ مَكۡرٗا وَمَكَرۡنَا مَكۡرٗا وَهُمۡ لَا
يَشۡعُرُونَ ﴿٥٠﴾

---

51. ನಂತರ ಅವರ ತಂತ್ರಗಾರಿಕೆಯ ಫಲಿತಾಂಶವು ಹೇಗಿತ್ತೆಂದು ನೋಡಿರಿ. ಅದೇನೆಂದರೆ, ನಾವು ಅವರನ್ನು ಮತ್ತು ಅವರ ಜನರನ್ನು ಸಂಪೂರ್ಣವಾಗಿ ನಾಶ ಮಾಡಿದೆವು.

فَٱنظُرۡ كَيۡفَ كَانَ عَٰقِبَةُ مَكۡرِهِمۡ أَنَّا دَمَّرۡنَٰهُمۡ
وَقَوۡمَهُمۡ أَجۡمَعِينَ ﴿٥١﴾

---

52. ಅವರು ಅಕ್ರಮವೆಸಗಿದ ಕಾರಣ ಅವರ ಮನೆಗಳು ಜನವಾಸವಿಲ್ಲದೆ ಕುಸಿದು ಬಿದ್ದಿವೆ. ನಿಶ್ಚಯವಾಗಿಯೂ ತಿಳುವಳಿಕೆಯಿರುವ ಜನರಿಗೆ ಅದರಲ್ಲಿ ದೃಷ್ಟಾಂತವಿದೆ.

فَتِلۡكَ بُيُوتُهُمۡ خَاوِيَةَۢ بِمَا ظَلَمُوٓاْۚ إِنَّ فِي ذَٰلِكَ
لَأٓيَةٗ لِّقَوۡمٖ يَعۡلَمُونَ ﴿٥٢﴾

| | |
|---|---|
| 53. ನಾವು ಸತ್ಯವಿಶ್ವಾಸಿಗಳನ್ನು ಮತ್ತು ದೇವಭಯವುಳ್ಳವರನ್ನು ರಕ್ಷಿಸಿದೆವು. | وَأَنجَيۡنَا ٱلَّذِينَ ءَامَنُواْ وَكَانُواْ يَتَّقُونَ ﴿٥٣﴾ |
| 54. ಲೂತರನ್ನು ನೆನಪಿಸಿಕೊಳ್ಳಿರಿ. ಅವರು ತಮ್ಮ ಜನರೊಡನೆ ಕೇಳಿದ ಸಂದರ್ಭ: “ಅತ್ಯಂತ ನಿಕೃಷ್ಟ ಕೆಲಸವೆಂದು ತಿಳಿದೂ ಸಹ ನೀವು ಈ ಅಶ್ಲೀಲಕ್ಕೆ ಮುಂದಾಗುತ್ತೀರಾ? | وَلُوطًا إِذۡ قَالَ لِقَوۡمِهِۦٓ أَتَأۡتُونَ ٱلۡفَٰحِشَةَ وَأَنتُمۡ تُبۡصِرُونَ ﴿٥٤﴾ |
| 55. ನೀವು ಲೈಂಗಿಕ ತೃಷೆಯನ್ನು ತೀರಿಸಲು ಮಹಿಳೆಯರ ಬದಲು ಪುರುಷರ ಬಳಿಗೆ ಹೋಗುತ್ತೀರಾ? ಅಲ್ಲ, ವಾಸ್ತವವಾಗಿ ನೀವು ವಿವೇಕವಿಲ್ಲದ ಜನರಾಗಿದ್ದೀರಿ. | أَئِنَّكُمۡ لَتَأۡتُونَ ٱلرِّجَالَ شَهۡوَةً مِّن دُونِ ٱلنِّسَآءِۚ بَلۡ أَنتُمۡ قَوۡمٞ تَجۡهَلُونَ ﴿٥٥﴾ |
| 56. ಆಗ ಆ ಜನರ ಉತ್ತರವು ಕೇವಲ ಈ ರೀತಿಯಾಗಿತ್ತು: “ಲೂತರ ಕುಟುಂಬವನ್ನು ನಿಮ್ಮ ಊರಿನಿಂದ ಓಡಿಸಿರಿ. ಅವರು ಬಹಳ ಪರಿಶುದ್ಧರಂತೆ ವರ್ತಿಸುತ್ತಿದ್ದಾರೆ.” | فَمَا كَانَ جَوَابَ قَوۡمِهِۦٓ إِلَّآ أَن قَالُوٓاْ أَخۡرِجُوٓاْ ءَالَ لُوطٖ مِّن قَرۡيَتِكُمۡۖ إِنَّهُمۡ أُنَاسٞ يَتَطَهَّرُونَ ﴿٥٦﴾ |
| 57. ಆಗ ನಾವು ಅವರನ್ನು ಮತ್ತು ಅವರ ಕುಟುಂಬವನ್ನು ರಕ್ಷಿಸಿದೆವು; ಅವರ ಹೆಂಡತಿಯನ್ನು ಬಿಟ್ಟು. ಅವಳು ಹಿಂದೆ ಉಳಿದವರಲ್ಲಿ ಸೇರಬೇಕೆಂದು ನಾವು ನಿರ್ಣಯಿಸಿದೆವು. | فَأَنجَيۡنَٰهُ وَأَهۡلَهُۥٓ إِلَّا ٱمۡرَأَتَهُۥ قَدَّرۡنَٰهَا مِنَ ٱلۡغَٰبِرِينَ ﴿٥٧﴾ |
| 58. ನಾವು ಅವರ ಮೇಲೆ ಒಂದು ವಿಶೇಷ ಮಳೆಯನ್ನು ಸುರಿಸಿದೆವು. ಎಚ್ಚರಿಕೆ ನೀಡಲಾದವರ ಮೇಲೆ ಸುರಿದ ಆ ಮಳೆಯು ಬಹಳ ನಿಕೃಷ್ಟವಾಗಿದೆ! | وَأَمۡطَرۡنَا عَلَيۡهِم مَّطَرٗاۖ فَسَآءَ مَطَرُ ٱلۡمُنذَرِينَ ﴿٥٨﴾ |
| 59. ಹೇಳಿರಿ: “ಅಲ್ಲಾಹನಿಗೆ ಸರ್ವಸ್ತುತಿ. ಅವನು ಆರಿಸಿದ ಅವನ ದಾಸರ ಮೇಲೆ ಶಾಂತಿಯಿರಲಿ. ಯಾರು ಶ್ರೇಷ್ಠರು? ಅಲ್ಲಾಹನೋ ಅಥವಾ ಅವರು ಅವನೊಂದಿಗೆ ಸಹಭಾಗಿಯಾಗಿ ಮಾಡಿದ ದೇವರುಗಳೋ? | قُلِ ٱلۡحَمۡدُ لِلَّهِ وَسَلَٰمٌ عَلَىٰ عِبَادِهِ ٱلَّذِينَ ٱصۡطَفَىٰٓۗ ءَآللَّهُ خَيۡرٌ أَمَّا يُشۡرِكُونَ ﴿٥٩﴾ |
| 60. ಭೂಮ್ಯಾಕಾಶಗಳನ್ನು ಸೃಷ್ಟಿಸಿದವನು ಮತ್ತು ಆಕಾಶದಿಂದ ನಿಮಗೆ ಮಳೆಯನ್ನು ಸುರಿಸಿದವನೋ? ನಂತರ ನಾವು ಅದರಿಂದ ಕಣ್ಮನ ತಣಿಸುವ ತೋಟಗಳನ್ನು ಬೆಳೆಸಿದೆವು. ಅದರ ಮರಗಳನ್ನು ಬೆಳೆಸಲು ನಿಮಗೆ ಸಾಧ್ಯವಾಗುತ್ತಿರಲಿಲ್ಲ. ಅಲ್ಲಾಹನೊಂದಿಗೆ ಬೇರೆ ದೇವರುಗಳು ಇದ್ದಾರೆಯೇ? ಅಲ್ಲ, ಅವರು (ಸತ್ಯಮಾರ್ಗದಿಂದ) ತಪ್ಪಿಹೋಗುವ ಜನರಾಗಿದ್ದಾರೆ. | أَمَّنۡ خَلَقَ ٱلسَّمَٰوَٰتِ وَٱلۡأَرۡضَ وَأَنزَلَ لَكُم مِّنَ ٱلسَّمَآءِ مَآءٗ فَأَنۢبَتۡنَا بِهِۦ حَدَآئِقَ ذَاتَ بَهۡجَةٖ مَّا كَانَ لَكُمۡ أَن تُنۢبِتُواْ شَجَرَهَآۗ أَءِلَٰهٞ مَّعَ ٱللَّهِۚ بَلۡ هُمۡ قَوۡمٞ يَعۡدِلُونَ ﴿٦٠﴾ |
| 61. ಭೂಮಿಯನ್ನು ವಾಸಯೋಗ್ಯವಾಗಿ ಮಾಡಿದವನು, ಅದರ ನಡುವೆ ನದಿಗಳನ್ನು ಹರಿಸಿದವನು, ಅದಕ್ಕೆ ಸ್ಥಿರತೆಯನ್ನು ನೀಡುವ ಪರ್ವತಗಳನ್ನು ನಿರ್ಮಿಸಿದವನು ಮತ್ತು ಎರಡು ಸಮುದ್ರಗಳ | أَمَّن جَعَلَ ٱلۡأَرۡضَ قَرَارٗا وَجَعَلَ خِلَٰلَهَآ أَنۡهَٰرٗا وَجَعَلَ لَهَا رَوَٰسِيَ وَجَعَلَ بَيۡنَ |

ٱلْبَحْرَيْنِ حَاجِزًا ۗ أَءِلَـٰهٌ مَّعَ ٱللَّهِ ۚ بَلْ أَكْثَرُهُمْ
لَا يَعْلَمُونَ ﴿٦١﴾

ನಡುವೆ ತಡೆಯನ್ನಿರಿಸಿದವನೋ? ಅಲ್ಲಾಹನೊಂದಿಗೆ ಬೇರೆ ದೇವರುಗಳು ಇದ್ದಾರೆಯೇ? ಅಲ್ಲ, ಅವರಲ್ಲಿ ಹೆಚ್ಚಿನವರಿಗೂ ತಿಳಿದಿಲ್ಲ.

---

أَمَّن يُجِيبُ ٱلْمُضْطَرَّ إِذَا دَعَاهُ وَيَكْشِفُ
ٱلسُّوٓءَ وَيَجْعَلُكُمْ خُلَفَآءَ ٱلْأَرْضِ ۗ أَءِلَـٰهٌ مَّعَ
ٱللَّهِ ۚ قَلِيلًا مَّا تَذَكَّرُونَ ﴿٦٢﴾

62. ಕಷ್ಟದಲ್ಲಿರುವವನು ಕರೆದು ಪ್ರಾರ್ಥಿಸಿದಾಗ ಅವನಿಗೆ ಉತ್ತರ ನೀಡುವವನು, ಕಷ್ಟವನ್ನು ನಿವಾರಿಸುವವನು ಮತ್ತು ನಿಮ್ಮನ್ನು ಭೂಮಿಯಲ್ಲಿ ಪ್ರತಿನಿಧಿಗಳನ್ನಾಗಿ ಮಾಡುವವನೋ? ಅಲ್ಲಾಹನೊಂದಿಗೆ ಬೇರೆ ದೇವರುಗಳು ಇದ್ದಾರೆಯೇ? ನೀವು ಸ್ವಲ್ಪವೇ ಉಪದೇಶ ಪಡೆಯುತ್ತೀರಿ.

---

أَمَّن يَهْدِيكُمْ فِى ظُلُمَـٰتِ ٱلْبَرِّ وَٱلْبَحْرِ وَمَن
يُرْسِلُ ٱلرِّيَـٰحَ بُشْرًۢا بَيْنَ يَدَىْ رَحْمَتِهِۦٓ ۗ أَءِلَـٰهٌ مَّعَ
ٱللَّهِ ۚ تَعَـٰلَى ٱللَّهُ عَمَّا يُشْرِكُونَ ﴿٦٣﴾

63. ನೆಲ ಮತ್ತು ಸಮುದ್ರಗಳ ಅಂಧಕಾರಗಳಲ್ಲಿ ನಿಮಗೆ ದಾರಿ ತೋರಿಸುವವನು ಮತ್ತು ತನ್ನ ದಯೆಗೆ (ಮಳೆಗೆ) ಮೊದಲು ಸುವಾರ್ತೆಯಾಗಿ ಗಾಳಿಯನ್ನು ಕಳುಹಿಸುವವನೋ? ಅಲ್ಲಾಹನೊಂದಿಗೆ ಬೇರೆ ದೇವರುಗಳು ಇದ್ದಾರೆಯೇ? ಅವರು ಮಾಡುವ ಸಹಭಾಗಿತ್ವ (ಶಿರ್ಕ್) ದಿಂದ ಅಲ್ಲಾಹು ಎಷ್ಟೋ ಉನ್ನತನಾಗಿದ್ದಾನೆ.

---

أَمَّن يَبْدَؤُا۟ ٱلْخَلْقَ ثُمَّ يُعِيدُهُۥ وَمَن يَرْزُقُكُم
مِّنَ ٱلسَّمَآءِ وَٱلْأَرْضِ ۗ أَءِلَـٰهٌ مَّعَ ٱللَّهِ ۚ قُلْ هَاتُوا۟
بُرْهَـٰنَكُمْ إِن كُنتُمْ صَـٰدِقِينَ ﴿٦٤﴾

64. ಮೊದಲ ಬಾರಿಗೆ ಸೃಷ್ಟಿಸಿ ನಂತರ ಆ ಸೃಷ್ಟಿಯನ್ನು ಪುನರಾವರ್ತಿ-ಸುವವನು ಮತ್ತು ಭೂಮ್ಯಾಕಾಶಗಳಿಂದ ನಿಮಗೆ ಆಹಾರಗಳನ್ನು ಒದಗಿಸುವವನೋ? ಅಲ್ಲಾಹನೊಂದಿಗೆ ಬೇರೆ ದೇವರುಗಳು ಇದ್ದಾರೆಯೇ? ಹೇಳಿರಿ: "ನೀವು ಸತ್ಯವಂತರಾಗಿದ್ದರೆ ನಿಮ್ಮಲ್ಲಿರುವ ಸಾಕ್ಷ್ಯಾಧಾರವನ್ನು ತನ್ನಿರಿ."

---

قُل لَّا يَعْلَمُ مَن فِى ٱلسَّمَـٰوَٰتِ وَٱلْأَرْضِ ٱلْغَيْبَ
إِلَّا ٱللَّهُ ۚ وَمَا يَشْعُرُونَ أَيَّانَ يُبْعَثُونَ ﴿٦٥﴾

65. ಹೇಳಿರಿ: "ಅಲ್ಲಾಹನ ಹೊರತು ಭೂಮ್ಯಾಕಾಶಗಳಲ್ಲಿರುವ ಯಾರಿಗೂ ಅದೃಶ್ಯ ಜ್ಞಾನವಿಲ್ಲ. ಅವರನ್ನು ಯಾವಾಗ ಜೀವ ನೀಡಿ ಎಬ್ಬಿಸಲಾಗುತ್ತದೆಯೆಂದು ಕೂಡ ಅವರಿಗೆ ತಿಳಿದಿಲ್ಲ."

---

بَلِ ٱدَّٰرَكَ عِلْمُهُمْ فِى ٱلْـَٔاخِرَةِ ۚ بَلْ هُمْ فِى شَكٍّ
مِّنْهَا ۖ بَلْ هُم مِّنْهَا عَمُونَ ﴿٦٦﴾

66. ಅಲ್ಲ, ಪರಲೋಕದ ಕುರಿತಾದ ಅವರ ಜ್ಞಾನವು ಬರಿದಾಗಿ ಬಿಟ್ಟಿದೆ. ಅಲ್ಲ, ಅವರು ಅದರ ಬಗ್ಗೆ ಸಂಶಯದಲ್ಲಿದ್ದಾರೆ. ಅಲ್ಲ, ಅವರು ಅದರ ಬಗ್ಗೆ ಕುರುಡರಾಗಿದ್ದಾರೆ.

---

وَقَالَ ٱلَّذِينَ كَفَرُوٓا۟ أَءِذَا كُنَّا تُرَٰبًا وَءَابَآؤُنَآ
أَئِنَّا لَمُخْرَجُونَ ﴿٦٧﴾

67. ಸತ್ಯನಿಷೇಧಿಗಳು ಹೇಳಿದರು: "ನಾವು ಮತ್ತು ನಮ್ಮ ಪೂರ್ವಜರು ಮಣ್ಣಾಗಿ ಹೋದ ಬಳಿಕ ನಮ್ಮನ್ನು (ಜೀವ ನೀಡಿ) ಹೊರತರಲಾಗುತ್ತದೆಯೇ?

---

لَقَدْ وُعِدْنَا هَـٰذَا نَحْنُ وَءَابَآؤُنَا مِن قَبْلُ إِنْ
هَـٰذَآ إِلَّآ أَسَـٰطِيرُ ٱلْأَوَّلِينَ ﴿٦٨﴾

68. ನಮಗೂ, ನಮಗಿಂತ ಮೊದಲಿನ ನಮ್ಮ ಪೂರ್ವಜರಿಗೂ ಇದನ್ನೇ ವಾಗ್ದಾನ ಮಾಡಲಾಗಿದೆ. ಇವು ಪ್ರಾಚೀನ ಕಾಲದ ಜನರ ಪುರಾಣಗಳೇ ಹೊರತು ಇನ್ನೇನಲ್ಲ."

69. ಹೇಳಿರಿ: “ನೀವು ಭೂಮಿಯಲ್ಲಿ ಸಂಚರಿಸಿರಿ. ನಂತರ ಅಪರಾಧಿಗಳ ಅಂತಿಮ ಫಲಿತಾಂಶವು ಹೇಗಿತ್ತೆಂದು ನೋಡಿರಿ.”

قُلۡ سِيرُواْ فِي ٱلۡأَرۡضِ فَٱنظُرُواْ كَيۡفَ كَانَ
عَٰقِبَةُ ٱلۡمُجۡرِمِينَ ٦٩

70. (ಪ್ರವಾದಿಯವರೇ) ಅವರ ಬಗ್ಗೆ ಬೇಸರಪಡಬೇಡಿ. ಅವರು ಮಾಡುತ್ತಿರುವ ಪಿತೂರಿಗಳ ಬಗ್ಗೆ ವ್ಯಥೆಪಡಬೇಡಿ.

وَلَا تَحۡزَنۡ عَلَيۡهِمۡ وَلَا تَكُن فِي ضَيۡقٖ مِّمَّا
يَمۡكُرُونَ ٧٠

71. ಅವರು ಹೇಳುತ್ತಾರೆ: “ಈ ವಾಗ್ದಾನವು ಯಾವಾಗ ಬರುತ್ತದೆ? ನೀವು ಸತ್ಯವಂತರಾಗಿದ್ದರೆ (ಹೇಳಿರಿ).”

وَيَقُولُونَ مَتَىٰ هَٰذَا ٱلۡوَعۡدُ إِن كُنتُمۡ
صَٰدِقِينَ ٧١

72. ಹೇಳಿರಿ: “ಬಹುಶಃ ನೀವು ತ್ವರೆ ಮಾಡುವ ವಿಷಯಗಳಲ್ಲಿ ಕೆಲವು ನಿಮ್ಮ ಸಮೀಪವೇ ಇರಬಹುದು.”

قُلۡ عَسَىٰٓ أَن يَكُونَ رَدِفَ لَكُم بَعۡضُ
ٱلَّذِي تَسۡتَعۡجِلُونَ ٧٢

73. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನಿಗೆ (ಅಲ್ಲಾಹನಿಗೆ) ಮನುಷ್ಯರ ಮೇಲೆ ಬಹಳ ಔದಾರ್ಯವಿದೆ. ಆದರೆ ಅವರಲ್ಲಿ ಹೆಚ್ಚಿನವರು ಕೃತಜ್ಞರಾಗುವುದಿಲ್ಲ.

وَإِنَّ رَبَّكَ لَذُو فَضۡلٍ عَلَى ٱلنَّاسِ وَلَٰكِنَّ
أَكۡثَرَهُمۡ لَا يَشۡكُرُونَ ٧٣

74. ಅವರ ಹೃದಯಗಳು ರಹಸ್ಯವಾಗಿಡುವುದನ್ನು ಮತ್ತು ಅವರು ಬಹಿರಂಗಪಡಿಸುವುದನ್ನು ನಿಮ್ಮ ಪರಿಪಾಲಕನು (ಅಲ್ಲಾಹು) ತಿಳಿಯುತ್ತಾನೆ.

وَإِنَّ رَبَّكَ لَيَعۡلَمُ مَا تُكِنُّ صُدُورُهُمۡ وَمَا
يُعۡلِنُونَ ٧٤

75. ಭೂಮ್ಯಾಕಾಶಗಳಲ್ಲಿ ಅದೃಶ್ಯವಾಗಿರುವ ಯಾವುದೇ ವಸ್ತುವೂ ಇಲ್ಲ—ಅದು ಸ್ಪಷ್ಟವಾದ ಒಂದು ದಾಖಲೆಯಲ್ಲಿ ನಮೂದಾಗಿರುವ ಹೊರತು.

وَمَا مِنۡ غَآئِبَةٖ فِي ٱلسَّمَآءِ وَٱلۡأَرۡضِ إِلَّا فِي
كِتَٰبٖ مُّبِينٍ ٧٥

76. ಇಸ್ರಾಯೇಲ್ ಮಕ್ಕಳು ಭಿನ್ನಮತ ತಳೆದಿರುವ ಹೆಚ್ಚಿನ ವಿಷಯಗಳನ್ನೂ ಈ ಕುರ್ಆನ್ ಅವರಿಗೆ ವಿವರಿಸಿಕೊಡುತ್ತದೆ.

إِنَّ هَٰذَا ٱلۡقُرۡءَانَ يَقُصُّ عَلَىٰ بَنِيٓ إِسۡرَٰٓءِيلَ
أَكۡثَرَ ٱلَّذِي هُمۡ فِيهِ يَخۡتَلِفُونَ ٧٦

77. ನಿಶ್ಚಯವಾಗಿಯೂ ಇದು ಸತ್ಯವಿಶ್ವಾಸಿಗಳಿಗೆ ಸನ್ಮಾರ್ಗದರ್ಶಿ ಮತ್ತು ದಯೆಯಾಗಿದೆ.

وَإِنَّهُۥ لَهُدٗى وَرَحۡمَةٞ لِّلۡمُؤۡمِنِينَ ٧٧

78. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ತನ್ನ ತೀರ್ಪಿನ ಮೂಲಕ ಅವರ ನಡುವೆ ತೀರ್ಮಾನ ಮಾಡುವನು. ಅವನು ಪ್ರಬಲನು ಮತ್ತು ಸರ್ವಜ್ಞನಾಗಿದ್ದಾನೆ.

إِنَّ رَبَّكَ يَقۡضِي بَيۡنَهُم بِحُكۡمِهِۦۚ وَهُوَ ٱلۡعَزِيزُ
ٱلۡعَلِيمُ ٧٨

79. ಆದ್ದರಿಂದ ನೀವು ಅಲ್ಲಾಹನಲ್ಲಿ ಭರವಸೆಯಿಡಿ. ನಿಶ್ಚಯವಾಗಿಯೂ ನೀವು ಸ್ಪಷ್ಟ ಸತ್ಯದಲ್ಲಿದ್ದೀರಿ.

فَتَوَكَّلۡ عَلَى ٱللَّهِۖ إِنَّكَ عَلَى ٱلۡحَقِّ ٱلۡمُبِينِ ٧٩

80. ಮೃತರಿಗೆ ಕೇಳುವಂತೆ ಮಾಡಲು ನಿಮಗೆ ಖಂಡಿತ ಸಾಧ್ಯವಿಲ್ಲ. ಕಿವುಡರು ಬೆನ್ನು ತಿರುಗಿಸಿ ನಡೆದರೆ ಅವರಿಗೆ ಕರೆ ಕೇಳುವಂತೆ ಮಾಡಲು ಕೂಡ ನಿಮಗೆ ಸಾಧ್ಯವಿಲ್ಲ.

إِنَّكَ لَا تُسۡمِعُ ٱلۡمَوۡتَىٰ وَلَا تُسۡمِعُ ٱلصُّمَّ ٱلدُّعَآءَ
إِذَا وَلَّوۡاْ مُدۡبِرِينَ ٨٠

81. ಕುರುಡರನ್ನು ಅವರ ದುರ್ಮಾರ್ಗದಿಂದ ಮುಕ್ತಗೊಳಿಸಿ ಸನ್ಮಾರ್ಗಕ್ಕೆ ದಾರಿ ತೋರಿಸಲು ನಿಮಗೆ ಸಾಧ್ಯವಿಲ್ಲ. ನಮ್ಮ ವಚನಗಳಲ್ಲಿ ವಿಶ್ವಾಸವಿಟ್ಟು ನಂತರ ಶರಣಾಗುವವರು ಯಾರೋ ಅವರಿಗೆ ಮಾತ್ರ ನೀವು ಕೇಳುವಂತೆ ಮಾಡಬಲ್ಲಿರಿ.

وَمَآ أَنتَ بِهَٰدِى ٱلْعُمْىِ عَن ضَلَٰلَتِهِمْ ۖ إِن تُسْمِعُ إِلَّا مَن يُؤْمِنُ بِـَٔايَٰتِنَا فَهُم مُّسْلِمُونَ ﴿٨١﴾

82. ಅವರ ಮೇಲೆ ಶಿಕ್ಷೆಯ ವಚನವು ನಿಜವಾಗುವಾಗ, ನಾವು ಅವರಿಗೋಸ್ಕರ ಭೂಮಿಯಿಂದ ಒಂದು ಜೀವಿಯನ್ನು ಹೊರತರುವೆವು. ಅದು ಅವರೊಡನೆ ಮಾತನಾಡುತ್ತಾ ಹೇಳುವುದು: "ಜನರು ನಮ್ಮ ವಚನಗಳಲ್ಲಿ ದೃಢವಾದ ವಿಶ್ವಾಸವನ್ನು ಹೊಂದಿರಲಿಲ್ಲ."

وَإِذَا وَقَعَ ٱلْقَوْلُ عَلَيْهِمْ أَخْرَجْنَا لَهُمْ دَآبَّةً مِّنَ ٱلْأَرْضِ تُكَلِّمُهُمْ أَنَّ ٱلنَّاسَ كَانُوا۟ بِـَٔايَٰتِنَا لَا يُوقِنُونَ ﴿٨٢﴾

83. ನಾವು ಎಲ್ಲಾ ಸಮುದಾಯಗಳಿಂದಲೂ ನಮ್ಮ ವಚನಗಳನ್ನು ನಿಷೇಧಿಸುವ ಒಂದೊಂದು ಗುಂಪನ್ನು ಒಟ್ಟುಗೂಡಿಸುವ ದಿನ. ನಂತರ ಅವರನ್ನು ಬೇರೆ ಬೇರೆಯಾಗಿ ನಿಲ್ಲಿಸಲಾಗುವುದು.

وَيَوْمَ نَحْشُرُ مِن كُلِّ أُمَّةٍ فَوْجًا مِّمَّن يُكَذِّبُ بِـَٔايَٰتِنَا فَهُمْ يُوزَعُونَ ﴿٨٣﴾

84. ಅವರೆಲ್ಲರೂ ಬಂದು ಸೇರಿದಾಗ, ಅಲ್ಲಾಹು ಕೇಳುವನು: "ನನ್ನ ವಚನಗಳ ಬಗ್ಗೆ ನಿಮಗೆ ಪೂರ್ಣವಾದ ಜ್ಞಾನವಿಲ್ಲದಿದ್ದೂ ಸಹ ನೀವು ಅವುಗಳನ್ನು ಏಕೆ ನಿಷೇಧಿಸಿದಿರಿ? ಅಥವಾ ನೀವು ಏನು ಮಾಡುತ್ತಿದ್ದಿರಿ?"

حَتَّىٰٓ إِذَا جَآءُو قَالَ أَكَذَّبْتُم بِـَٔايَٰتِى وَلَمْ تُحِيطُوا۟ بِهَا عِلْمًا أَمَّاذَا كُنتُمْ تَعْمَلُونَ ﴿٨٤﴾

85. ಅವರು ಮಾಡಿದ ಅಕ್ರಮಗಳಿಂದಾಗಿ ಅವರ ಮೇಲೆ ಶಿಕ್ಷೆಯ ವಚನವು ಖಾತ್ರಿಯಾಗಿ ಬಿಟ್ಟಿತು. ಆಗ ಅವರು ಏನೂ ಮಾತನಾಡಲಾರರು.

وَوَقَعَ ٱلْقَوْلُ عَلَيْهِم بِمَا ظَلَمُوا۟ فَهُمْ لَا يَنطِقُونَ ﴿٨٥﴾

86. ನಾವು ಅವರಿಗೆ ರಾತ್ರಿಯನ್ನು ವಿಶ್ರಾಂತಿ ಪಡೆಯುವುದಕ್ಕಾಗಿ ಮತ್ತು ಹಗಲನ್ನು ಪ್ರಕಾಶಮಾನವಾಗಿ ಮಾಡಿದ್ದನ್ನು ಅವರು ನೋಡಿಲ್ಲವೇ? ನಿಶ್ಚಯವಾಗಿಯೂ ವಿಶ್ವಾಸವಿಡುವ ಜನರಿಗೆ ಅದರಲ್ಲಿ ದೃಷ್ಟಾಂತಗಳಿವೆ.

أَلَمْ يَرَوْا۟ أَنَّا جَعَلْنَا ٱلَّيْلَ لِيَسْكُنُوا۟ فِيهِ وَٱلنَّهَارَ مُبْصِرًا ۚ إِنَّ فِى ذَٰلِكَ لَـَٔايَٰتٍ لِّقَوْمٍ يُؤْمِنُونَ ﴿٨٦﴾

87. ಕಹಳೆಯಲ್ಲಿ ಊದಲಾಗುವ ದಿನ! ಆಗ ಭೂಮ್ಯಾಕಾಶಗಳ-ಲ್ಲಿರುವವರೆಲ್ಲರೂ ಭಯದಿಂದ ನಡುಗುವರು—ಅಲ್ಲಾಹು ಇಚ್ಛಿಸಿದವರ ಹೊರತು. ಎಲ್ಲರೂ ಅತ್ಯಂತ ವಿನಯದಿಂದ ಅವನ ಮುಂದೆ ಬರುವರು.

وَيَوْمَ يُنفَخُ فِى ٱلصُّورِ فَفَزِعَ مَن فِى ٱلسَّمَٰوَٰتِ وَمَن فِى ٱلْأَرْضِ إِلَّا مَن شَآءَ ٱللَّهُ ۚ وَكُلٌّ أَتَوْهُ دَٰخِرِينَ ﴿٨٧﴾

88. ನೀವು ಪರ್ವತಗಳನ್ನು ನೋಡುವಾಗ ಅವುಗಳನ್ನು ನಿಶ್ಚಲವೆಂದು ಭಾವಿಸುತ್ತೀರಿ. ಆದರೆ ಅವು ಮೋಡಗಳಂತೆ ಹಾರಾಡುವುವು. ಎಲ್ಲವೂ ಅಲ್ಲಾಹನ ಕಾಯಕಗಳಾಗಿದ್ದು, ಅವನು ಎಲ್ಲವನ್ನೂ ಸಮರ್ಪಕಗೊಳಿಸಿದ್ದಾನೆ. ನಿಶ್ಚಯವಾಗಿಯೂ

وَتَرَى ٱلْجِبَالَ تَحْسَبُهَا جَامِدَةً وَهِىَ تَمُرُّ مَرَّ ٱلسَّحَابِ ۚ صُنْعَ ٱللَّهِ ٱلَّذِىٓ أَتْقَنَ كُلَّ شَىْءٍ ۚ إِنَّهُۥ خَبِيرٌۢ بِمَا تَفْعَلُونَ ﴿٨٨﴾

ನೀವು ಮಾಡುತ್ತಿರುವ ಕರ್ಮಗಳ ಬಗ್ಗೆ ಅವನು ಸೂಕ್ಷ್ಮಜ್ಞಾನವುಳ್ಳವನಾಗಿದ್ದಾನೆ.

---

89. ಯಾರು ಒಂದು ಒಳಿತಿನೊಂದಿಗೆ ಬರುತ್ತಾರೋ, ಅವರಿಗೆ ಅದಕ್ಕಿಂತಲೂ ಶ್ರೇಷ್ಠವಾದುದು ದೊರೆಯುತ್ತದೆ. ಅವರು ಅಂದಿನ ಭಯವಿಹ್ವಲತೆಯಿಂದ ದೂರವಾಗಿ ನಿರ್ಭಯರಾಗಿರುತ್ತಾರೆ.

مَن جَآءَ بِٱلۡحَسَنَةِ فَلَهُۥ خَيۡرٞ مِّنۡهَا وَهُم مِّن فَزَعٖ يَوۡمَئِذٍ ءَامِنُونَ ﴿٨٩﴾

---

90. ಯಾರು ಒಂದು ಕೆಡುಕಿನೊಂದಿಗೆ ಬರುತ್ತಾರೋ, ಅವರು ಅಧೋಮುಖಿಗಳಾಗಿ ನರಕದಲ್ಲಿ ಬೀಳುವರು. ನೀವು ಮಾಡಿರುವ ಕರ್ಮಗಳಿಗಲ್ಲದೆ ಬೇರೇನಾದರೂ ನಿಮಗೆ ಪ್ರತಿಫಲ ನೀಡಲಾಗುವುದೇ?

وَمَن جَآءَ بِٱلسَّيِّئَةِ فَكُبَّتۡ وُجُوهُهُمۡ فِي ٱلنَّارِ هَلۡ تُجۡزَوۡنَ إِلَّا مَا كُنتُمۡ تَعۡمَلُونَ ﴿٩٠﴾

---

91. ಈ ನಗರವನ್ನು ಪವಿತ್ರಗೊಳಿಸಿದ ಇದರ ಪರಿಪಾಲಕನನ್ನು (ಅಲ್ಲಾಹನನ್ನು) ಮಾತ್ರ ಆರಾಧಿಸಬೇಕೆಂದು ನನಗೆ ಆಜ್ಞಾಪಿಸಲಾಗಿದೆ. ಎಲ್ಲ ವಸ್ತುಗಳೂ ಅವನಿಗೆ ಸೇರಿದ್ದು. ನಾನು ಮುಸಲ್ಮಾನರಲ್ಲಿ ಸೇರಬೇಕೆಂದು ನನಗೆ ಆಜ್ಞಾಪಿಸಲಾಗಿದೆ.

إِنَّمَآ أُمِرۡتُ أَنۡ أَعۡبُدَ رَبَّ هَٰذِهِ ٱلۡبَلۡدَةِ ٱلَّذِي حَرَّمَهَا وَلَهُۥ كُلُّ شَيۡءٖۖ وَأُمِرۡتُ أَنۡ أَكُونَ مِنَ ٱلۡمُسۡلِمِينَ ﴿٩١﴾

---

92. ಕುರ್‌ಆನನ್ನು ಓದಿಕೊಡುವಂತೆಯೂ (ನನಗೆ ಆಜ್ಞಾಪಿಸಲಾಗಿದೆ). ಯಾರಾದರೂ ಸನ್ಮಾರ್ಗವನ್ನು ಪಡೆದರೆ ಅವನು ಸ್ವತಃ ಅವನ ಒಳಿತಿಗಾಗಿಯೇ ಸನ್ಮಾರ್ಗವನ್ನು ಪಡೆಯುತ್ತಾನೆ. ಯಾರಾದರೂ ದಾರಿತಪ್ಪಿ ನಡೆದರೆ ಹೇಳಿರಿ: "ನಾನು ಕೇವಲ ಒಬ್ಬ ಮುನ್ನೆಚ್ಚರಿಕೆ ನೀಡುವವನು ಮಾತ್ರ."

وَأَنۡ أَتۡلُوَاْ ٱلۡقُرۡءَانَۖ فَمَنِ ٱهۡتَدَىٰ فَإِنَّمَا يَهۡتَدِي لِنَفۡسِهِۦۖ وَمَن ضَلَّ فَقُلۡ إِنَّمَآ أَنَا۠ مِنَ ٱلۡمُنذِرِينَ ﴿٩٢﴾

---

93. ಹೇಳಿರಿ: "ಅಲ್ಲಾಹನಿಗೆ ಸರ್ವಸ್ತುತಿ. ಅವನು ನಿಮಗೆ ಅವನ ದೃಷ್ಟಾಂತಗಳನ್ನು ತೋರಿಸಿಕೊಡುವನು. ಆಗ ನೀವು ಅವುಗಳನ್ನು ಅರಿತುಕೊಳ್ಳುವಿರಿ. ನೀವು ಮಾಡುತ್ತಿರುವ ಕರ್ಮಗಳ ಬಗ್ಗೆ ನಿಮ್ಮ ಪರಿಪಾಲಕನು (ಅಲ್ಲಾಹು) ಸ್ವಲ್ಪವೂ ನಿರ್ಲಕ್ಷ್ಯನಲ್ಲ."

وَقُلِ ٱلۡحَمۡدُ لِلَّهِ سَيُرِيكُمۡ ءَايَٰتِهِۦ فَتَعۡرِفُونَهَاۚ وَمَا رَبُّكَ بِغَٰفِلٍ عَمَّا تَعۡمَلُونَ ﴿٩٣﴾

# 28. ಅಲ್-ಕ್ವಸಸ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ತ್ವಾ-ಸೀನ್-ಮೀಮ್. | طسٓمٓ ١ |
| 2. | ಇವು ಸ್ಪಷ್ಟ ಗ್ರಂಥದ ವಚನಗಳಾಗಿವೆ. | تِلۡكَ ءَايَٰتُ ٱلۡكِتَٰبِ ٱلۡمُبِينِ ٢ |
| 3. | ನಾವು ನಿಮಗೆ ಮೂಸಾ ಮತ್ತು ಫರೋಹನ ಸತ್ಯ ಸಮಾಚಾರವನ್ನು ತಿಳಿಸಿಕೊಡುತ್ತೇವೆ. ವಿಶ್ವಾಸವಿಡುವ ಜನರಿಗಾಗಿ. | نَتۡلُواْ عَلَيۡكَ مِن نَّبَإِ مُوسَىٰ وَفِرۡعَوۡنَ بِٱلۡحَقِّ لِقَوۡمٖ يُؤۡمِنُونَ ٣ |
| 4. | ನಿಶ್ಚಯವಾಗಿಯೂ ಫರೋಹನು ಭೂಮಿಯಲ್ಲಿ ಅಹಂಕಾರದಿಂದ ವರ್ತಿಸಿದನು. ಅವನು ಅಲ್ಲಿನ ನಿವಾಸಿಗಳನ್ನು ಪಂಗಡಗಳಾಗಿ ವಿಭಜಿಸಿದ್ದನು. ಅವರಲ್ಲಿ ಒಂದು ಪಂಗಡವನ್ನು ಅಸಹಾಯಕರನ್ನಾಗಿ ಮಾಡಿದ್ದನು. ಅವನು ಅವರ ಗಂಡುಮಕ್ಕಳನ್ನು ಕತ್ತು ಕೊಯ್ದು ಸಾಯಿಸುತ್ತಿದ್ದನು ಮತ್ತು ಅವರ ಹೆಣ್ಣು ಮಕ್ಕಳನ್ನು ಜೀವಂತ ಬಿಡುತ್ತಿದ್ದನು. ನಿಶ್ಚಯವಾಗಿಯೂ ಅವನು ಕಿಡಿಗೇಡಿಗಳಲ್ಲಿ ಸೇರಿದವನಾಗಿದ್ದನು. | إِنَّ فِرۡعَوۡنَ عَلَا فِي ٱلۡأَرۡضِ وَجَعَلَ أَهۡلَهَا شِيَعٗا يَسۡتَضۡعِفُ طَآئِفَةٗ مِّنۡهُمۡ يُذَبِّحُ أَبۡنَآءَهُمۡ وَيَسۡتَحۡيِۦ نِسَآءَهُمۡۚ إِنَّهُۥ كَانَ مِنَ ٱلۡمُفۡسِدِينَ ٤ |
| 5. | ನಂತರ ನಾವು ಭೂಮಿಯಲ್ಲಿ ಅಸಹಾಯಕರಾಗಿದ್ದ ಆ ಜನರ ಮೇಲೆ ಔದಾರ್ಯ ತೋರಲು, ಅವರನ್ನು ಮುಖಂಡರನ್ನಾಗಿ ಮಾಡಲು ಮತ್ತು ಅವರನ್ನು ಭೂಮಿಯ ವಾರಸುದಾರರನ್ನಾಗಿ ಮಾಡಲು ಬಯಸಿದೆವು. | وَنُرِيدُ أَن نَّمُنَّ عَلَى ٱلَّذِينَ ٱسۡتُضۡعِفُواْ فِي ٱلۡأَرۡضِ وَنَجۡعَلَهُمۡ أَئِمَّةٗ وَنَجۡعَلَهُمُ ٱلۡوَٰرِثِينَ ٥ |
| 6. | ಅವರಿಗೆ ಭೂಮಿಯಲ್ಲಿ ಅಧಿಕಾರವನ್ನು ನೀಡಲು ಮತ್ತು ಫರೋಹ, ಹಾಮಾನ್ ಹಾಗೂ ಅವರ ಸೈನ್ಯಗಳು ಅವರ ಬಗ್ಗೆ ಏನನ್ನು ಭಯಪಡುತ್ತಿದ್ದರೋ ಅದನ್ನು ಅವರಿಗೆ ತೋರಿಸಿಕೊಡಲು ಬಯಸಿದೆವು. | وَنُمَكِّنَ لَهُمۡ فِي ٱلۡأَرۡضِ وَنُرِيَ فِرۡعَوۡنَ وَهَٰمَٰنَ وَجُنُودَهُمَا مِنۡهُم مَّا كَانُواْ يَحۡذَرُونَ ٦ |
| 7. | ಮೂಸಾರ ತಾಯಿಗೆ ನಾವು ಹೀಗೆ ಸಂದೇಶವನ್ನು ನೀಡಿದೆವು: “ನೀವು ಮೂಸಾರಿಗೆ ಸ್ತನಪಾನ ಮಾಡಿರಿ. ಅವರ ವಿಷಯದಲ್ಲಿ ನಿಮಗೇನಾದರೂ ಭಯವಾದರೆ ಅವರನ್ನು ನದಿಯಲ್ಲಿ ಎಸೆಯಿರಿ. ನೀವು ಭಯಪಡಬೇಡಿ ಮತ್ತು ದುಃಖಿಸಬೇಡಿ. ನಿಶ್ಚಯವಾಗಿಯೂ ನಾವು ಮೂಸಾರನ್ನು ನಿಮ್ಮ ಮಡಿಲಿಗೆ ಮರಳಿಸುವೆವು ಮತ್ತು (ನಂತರ) ಅವರನ್ನು ಸಂದೇಶವಾಹಕರನ್ನಾಗಿ ಮಾಡುವೆವು.” | وَأَوۡحَيۡنَآ إِلَىٰٓ أُمِّ مُوسَىٰٓ أَنۡ أَرۡضِعِيهِۖ فَإِذَا خِفۡتِ عَلَيۡهِ فَأَلۡقِيهِ فِي ٱلۡيَمِّ وَلَا تَخَافِي وَلَا تَحۡزَنِيٓۖ إِنَّا رَآدُّوهُ إِلَيۡكِ وَجَاعِلُوهُ مِنَ ٱلۡمُرۡسَلِينَ ٧ |

8. ನಂತರ ಫರೋಹನ ಜನರು ಮೂಸಾರನ್ನು (ನದಿಯಿಂದ) ಎತ್ತಿದರು—ಅವರು ಅವರ ವೈರಿಯಾಗಲು ಮತ್ತು ಅವರ ದುಃಖಕ್ಕೆ ಹೇತುವಾಗಲು. ನಿಶ್ಚಯವಾಗಿಯೂ ಫರೋಹ, ಹಾಮಾನ್ ಮತ್ತು ಅವರ ಸೈನ್ಯಗಳು ಪಾಪಿಗಳಾಗಿದ್ದರು.

فَٱلۡتَقَطَهُۥٓ ءَالُ فِرۡعَوۡنَ لِيَكُونَ لَهُمۡ عَدُوّٗا وَحَزَنًاۗ إِنَّ فِرۡعَوۡنَ وَهَٰمَٰنَ وَجُنُودَهُمَا كَانُواْ خَٰطِـِٔينَ ٨

9. ಫರೋಹನ ಪತ್ನಿ ಹೇಳಿದಳು: "ಇವನು ನನಗೂ, ನಿಮಗೂ ಕಣ್ಮನ ತಣಿಸುತ್ತಿದ್ದಾನೆ. ದಯವಿಟ್ಟು ಇವನನ್ನು ಕೊಲ್ಲಬೇಡಿ. ನಮಗೆ ಇವನಿಂದ ಉಪಕಾರವಾಗಬಹುದು ಅಥವಾ ನಮಗೆ ಇವನನ್ನು ಪುತ್ರನಾಗಿ ಸ್ವೀಕರಿಸಿಕೊಳ್ಳಬಹುದು." ಅವರಿಗೆ (ನಿಜಸಂಗತಿಯೇನೆಂದು) ತಿಳಿದಿರಲಿಲ್ಲ.

وَقَالَتِ ٱمۡرَأَتُ فِرۡعَوۡنَ قُرَّتُ عَيۡنٖ لِّي وَلَكَۖ لَا تَقۡتُلُوهُ عَسَىٰٓ أَن يَنفَعَنَآ أَوۡ نَتَّخِذَهُۥ وَلَدٗا وَهُمۡ لَا يَشۡعُرُونَ ٩

10. ಮೂಸಾರ ತಾಯಿಯ ಹೃದಯವು ಬರಿದಾಯಿತು. ನಾವು ಅವಳಿಗೆ ಮಾನಸಿಕ ಸ್ಥೈರ್ಯವನ್ನು ನೀಡದಿರುತ್ತಿದ್ದರೆ ಅವಳು ಮೂಸಾರ ಸಮಾಚಾರವನ್ನು ಬಹಿರಂಗಪಡಿಸಿಯೇ ಬಿಡುತ್ತಿದ್ದಳು. ಅವಳು ದೃಢವಿಶ್ವಾಸಿಗಳಲ್ಲಿ ಸೇರಲೆಂದು (ನಾವು ಅವಳಿಗೆ ಸ್ಥೈರ್ಯವನ್ನು ನೀಡಿದೆವು).

وَأَصۡبَحَ فُؤَادُ أُمِّ مُوسَىٰ فَٰرِغًاۖ إِن كَادَتۡ لَتُبۡدِي بِهِۦ لَوۡلَآ أَن رَّبَطۡنَا عَلَىٰ قَلۡبِهَا لِتَكُونَ مِنَ ٱلۡمُؤۡمِنِينَ ١٠

11. ಮೂಸಾರ ತಾಯಿ ಅವರ ಸಹೋದರಿಯೊಡನೆ ಹೇಳಿದಳು: "ನೀನು ಅವನ ಹಿಂದೆಯೇ ಹೋಗು." ಅವಳು (ಸಹೋದರಿ) ಅವರಿಗೆ ತಿಳಿಯದಂತೆಯೇ ದೂರದಿಂದ ಮೂಸಾರನ್ನು ಗಮನಿಸುತ್ತಿದ್ದಳು.

وَقَالَتۡ لِأُخۡتِهِۦ قُصِّيهِۖ فَبَصُرَتۡ بِهِۦ عَن جُنُبٖ وَهُمۡ لَا يَشۡعُرُونَ ١١

12. ಇದಕ್ಕೆ ಮೊದಲೇ ನಾವು ದಾದಿಯರ ಮೊಲೆಹಾಲು ಕುಡಿಯದಂತೆ ಮೂಸಾರನ್ನು ತಡೆದಿದ್ದೆವು.[1] ಅವಳು (ಸಹೋದರಿ) ಹೇಳಿದಳು: "ನಿಮ್ಮ ಪರವಾಗಿ ಈ ಮಗುವನ್ನು ಸಾಕುವ ಮತ್ತು ಈ ಮಗುವಿನ ಹಿತಚಿಂತನೆ ಮಾಡುವ ಒಂದು ಮನೆಯವರ ಬಗ್ಗೆ ನಾನು ನಿಮಗೆ ತಿಳಿಸಿಕೊಡಲೇ?"

وَحَرَّمۡنَا عَلَيۡهِ ٱلۡمَرَاضِعَ مِن قَبۡلُ فَقَالَتۡ هَلۡ أَدُلُّكُمۡ عَلَىٰٓ أَهۡلِ بَيۡتٖ يَكۡفُلُونَهُۥ لَكُمۡ وَهُمۡ لَهُۥ نَٰصِحُونَ ١٢

13. ಹೀಗೆ ನಾವು ಮೂಸಾರನ್ನು ಅವರ ತಾಯಿಗೆ—ಅವಳ ಕಣ್ಣು ತಂಪಾಗಲು, ಅವಳು ದುಃಖಿಸದಿರಲು ಮತ್ತು ಅಲ್ಲಾಹನ ವಾಗ್ದಾನವು ಸತ್ಯವೆಂದು ಅವಳಿಗೆ ಮನವರಿಕೆಯಾಗಲು—ಹಿಂದಿರುಗಿಸಿದೆವು. ಆದರೆ ಜನರಲ್ಲಿ ಹೆಚ್ಚಿನವರು ಇದನ್ನು ತಿಳಿದಿಲ್ಲ.

فَرَدَدۡنَٰهُ إِلَىٰٓ أُمِّهِۦ كَيۡ تَقَرَّ عَيۡنُهَا وَلَا تَحۡزَنَ وَلِتَعۡلَمَ أَنَّ وَعۡدَ ٱللَّهِ حَقّٞ وَلَٰكِنَّ أَكۡثَرَهُمۡ لَا يَعۡلَمُونَ ١٣

14. ನಂತರ ಮೂಸಾ ಪ್ರೌಢಾವಸ್ಥೆಗೆ ತಲುಪಿ ಪೂರ್ಣ ಬಲವನ್ನು ಪಡೆದಾಗ, ನಾವು ಅವರಿಗೆ ವಿವೇಕ ಮತ್ತು ಜ್ಞಾನವನ್ನು

وَلَمَّا بَلَغَ أَشُدَّهُۥ وَٱسۡتَوَىٰٓ ءَاتَيۡنَٰهُ حُكۡمٗا وَعِلۡمٗاۚ وَكَذَٰلِكَ نَجۡزِي ٱلۡمُحۡسِنِينَ ١٤

[1] ಅರಮನೆಯಲ್ಲಿ ಮೂಸಾ (ಅವರ ಮೇಲೆ ಶಾಂತಿಯಿರಲಿ) ಯಾವುದೇ ದಾದಿಯರ ಮೊಲೆಹಾಲು ಕುಡಿಯುತ್ತಿರಲಿಲ್ಲ.

ನೀಡಿದೆವು. ಒಳಿತು ಮಾಡುವವರಿಗೆ ನಾವು ಈ ರೀತಿ ಪ್ರತಿಫಲವನ್ನು ನೀಡುತ್ತೇವೆ.

---

وَدَخَلَ ٱلْمَدِينَةَ عَلَىٰ حِينِ غَفْلَةٍ مِّنْ أَهْلِهَا فَوَجَدَ فِيهَا رَجُلَيْنِ يَقْتَتِلَانِ هَٰذَا مِن شِيعَتِهِۦ وَهَٰذَا مِنْ عَدُوِّهِۦ ۖ فَٱسْتَغَٰثَهُ ٱلَّذِى مِن شِيعَتِهِۦ عَلَى ٱلَّذِى مِنْ عَدُوِّهِۦ فَوَكَزَهُۥ مُوسَىٰ فَقَضَىٰ عَلَيْهِ ۖ قَالَ هَٰذَا مِنْ عَمَلِ ٱلشَّيْطَٰنِ ۖ إِنَّهُۥ عَدُوٌّ مُّضِلٌّ مُّبِينٌ ﴿١٥﴾

15. ನಗರವಾಸಿಗಳು ನಿರ್ಲಕ್ಷ್ಯರಾಗಿದ್ದ (ವಿಶ್ರಾಂತಿ ಪಡೆಯುತ್ತಿದ್ದ) ಸಮಯದಲ್ಲಿ ಮೂಸಾ ನಗರಕ್ಕೆ ಬಂದರು. ಅಲ್ಲಿ ಇಬ್ಬರು ಹೊಡೆದಾಡುವುದನ್ನು ಅವರು ಕಂಡರು. ಒಬ್ಬ ಅವರ ಜನರಲ್ಲಿ ಸೇರಿದವನಾಗಿದ್ದರೆ, ಇನ್ನೊಬ್ಬ ಅವರ ವೈರಿಗಳಲ್ಲಿ ಸೇರಿದವನಾಗಿದ್ದನು. ಆಗ ಅವರ ಜನರಲ್ಲಿ ಸೇರಿದವನು ಅವರ ವೈರಿಗಳಲ್ಲಿ ಸೇರಿದವನ ವಿರುದ್ಧ ಮೂಸಾರೊಡನೆ ಸಹಾಯ ಬೇಡಿದನು. ಮೂಸಾ ಮುಷ್ಠಿ ಬಿಗಿಹಿಡಿದು ಅವನಿಗೆ ಥಳಿಸಿದರು. ಅದು ಅವನ ಕಥೆಯನ್ನು ಮುಗಿಸಿತು. ಮೂಸಾ ಹೇಳಿದರು: "ಇದು ಶೈತಾನನ ಕೃತ್ಯಗಳಲ್ಲಿ ಸೇರಿದ್ದು. ಅವನು ದಾರಿತಪ್ಪಿಸುವ ಸ್ಪಷ್ಟ ಶತ್ರುವಾಗಿದ್ದಾನೆ."

---

قَالَ رَبِّ إِنِّى ظَلَمْتُ نَفْسِى فَٱغْفِرْ لِى فَغَفَرَ لَهُۥٓ ۚ إِنَّهُۥ هُوَ ٱلْغَفُورُ ٱلرَّحِيمُ ﴿١٦﴾

16. ಮೂಸಾ ಹೇಳಿದರು: "ಓ ನನ್ನ ಪರಿಪಾಲಕನೇ! ನಿಶ್ಚಯವಾಗಿಯೂ ನಾನು ನನ್ನ ಮೇಲೆಯೇ ಅನ್ಯಾಯವೆಸಗಿದ್ದೇನೆ. ಆದ್ದರಿಂದ ನನ್ನನ್ನು ಕ್ಷಮಿಸು." ಆಗ ಅಲ್ಲಾಹು ಅವರನ್ನು ಕ್ಷಮಿಸಿದನು. ನಿಶ್ಚಯವಾಗಿಯೂ ಅವನು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

---

قَالَ رَبِّ بِمَآ أَنْعَمْتَ عَلَىَّ فَلَنْ أَكُونَ ظَهِيرًا لِّلْمُجْرِمِينَ ﴿١٧﴾

17. ಅವರು ಹೇಳಿದರು: "ಓ ನನ್ನ ಪರಿಪಾಲಕನೇ! ನೀನು ನನಗೆ ಅನುಗ್ರಹಗಳನ್ನು ದಯಪಾಲಿಸಿರುವ ಕಾರಣ ಇನ್ನು ಮುಂದೆ ನಾನು ಯಾವುದೇ ಅಪರಾಧಿಗಳಿಗೂ ಸಹಾಯ ಮಾಡುವುದಿಲ್ಲ."

---

فَأَصْبَحَ فِى ٱلْمَدِينَةِ خَآئِفًا يَتَرَقَّبُ فَإِذَا ٱلَّذِى ٱسْتَنصَرَهُۥ بِٱلْأَمْسِ يَسْتَصْرِخُهُۥ ۚ قَالَ لَهُۥ مُوسَىٰٓ إِنَّكَ لَغَوِىٌّ مُّبِينٌ ﴿١٨﴾

18. ಬೆಳಗಾಗುತ್ತಿದ್ದಂತೆ, ಮೂಸಾ ಭಯದೊಂದಿಗೆ (ಜನರು ತನ್ನ ಬಗ್ಗೆ ಏನು ಹೇಳುತ್ತಾರೆಂಬ) ಸುದ್ದಿಗಳನ್ನು ನಿರೀಕ್ಷಿಸುತ್ತಾ ನಗರಕ್ಕೆ ಬಂದರು. ಆಗ ಅಗೋ! ನಿನ್ನೆ ಅವರೊಡನೆ ಸಹಾಯ ಕೇಳಿದ ಅದೇ ವ್ಯಕ್ತಿ ಪುನಃ ಅವರನ್ನು ಸಹಾಯಕ್ಕಾಗಿ ಕೂಗುತ್ತಿದ್ದಾನೆ! ಮೂಸಾ ಅವನೊಡನೆ ಹೇಳಿದರು: "ನೀನೊಬ್ಬ ಸ್ಪಷ್ಟ ದುರ್ಮಾರ್ಗಿಯಾಗಿರುವೆ."

---

فَلَمَّآ أَنْ أَرَادَ أَن يَبْطِشَ بِٱلَّذِى هُوَ عَدُوٌّ لَّهُمَا قَالَ يَٰمُوسَىٰٓ أَتُرِيدُ أَن تَقْتُلَنِى كَمَا قَتَلْتَ نَفْسًۢا بِٱلْأَمْسِ ۖ إِن تُرِيدُ إِلَّآ أَن تَكُونَ جَبَّارًا فِى ٱلْأَرْضِ وَمَا تُرِيدُ أَن تَكُونَ مِنَ ٱلْمُصْلِحِينَ ﴿١٩﴾

19. ನಂತರ ಮೂಸಾ ತಮ್ಮಿಬ್ಬರ ವೈರಿಯನ್ನು ಹಿಡಿಯಲು ಉದ್ದೇಶಿಸಿದಾಗ ಅವನು ಹೇಳಿದನು: "ಮೂಸಾ! ನೀನು ನಿನ್ನೆ ಒಬ್ಬನನ್ನು ಕೊಂದಂತೆ ಇಂದು ನನ್ನನ್ನು ಕೊಲ್ಲಲು ಬಯಸುತ್ತೀಯಾ? ನೀನು ನಾಡಿನಲ್ಲಿ ಕ್ರೂರಿಯಾಗಲು ಬಯಸುತ್ತಿರುವೆಯೇ ಹೊರತು ಸುಧಾರಣೆ ಮಾಡುವವರಲ್ಲಿ ಸೇರಲು ಬಯಸುತ್ತಿಲ್ಲ."

20. ಆಗ ನಗರ ತುತ್ತತುದಿಯಿಂದ ಒಬ್ಬ ವ್ಯಕ್ತಿ ಓಡಿ ಬಂದು ಹೇಳಿದನು: "ಮೂಸಾ! ನಿಮ್ಮನ್ನು ಕೊಲ್ಲಲು ಮುಖಂಡರು ತಂತ್ರಗಾರಿಕೆ ಮಾಡುತ್ತಿದ್ದಾರೆ. ನೀವು ಇಲ್ಲಿಂದ ಹೊರಡಿ. ನಿಜಕ್ಕೂ ನಾನು ನಿಮ್ಮ ಹಿತಚಿಂತಕರಲ್ಲಿ ಒಬ್ಬನಾಗಿದ್ದೇನೆ."

وَجَآءَ رَجُلٞ مِّنۡ أَقۡصَا ٱلۡمَدِينَةِ يَسۡعَىٰ قَالَ يَٰمُوسَىٰٓ إِنَّ ٱلۡمَلَأَ يَأۡتَمِرُونَ بِكَ لِيَقۡتُلُوكَ فَٱخۡرُجۡ إِنِّي لَكَ مِنَ ٱلنَّٰصِحِينَ ﴿٢٠﴾

21. ಆಗ ಮೂಸಾ ಭಯದಿಂದ ಮತ್ತು ಎಚ್ಚರಿಕೆಯಿಂದ ಅಲ್ಲಿಂದ ಹೊರಟರು. ಅವರು ಹೇಳಿದರು: "ನನ್ನ ಪರಿಪಾಲಕನೇ! ಅಕ್ರಮಿಗಳಾದ ಈ ಜನರಿಂದ ನನ್ನನ್ನು ಕಾಪಾಡು."

فَخَرَجَ مِنۡهَا خَآئِفٗا يَتَرَقَّبُۖ قَالَ رَبِّ نَجِّنِي مِنَ ٱلۡقَوۡمِ ٱلظَّٰلِمِينَ ﴿٢١﴾

22. ನಂತರ ಅವರು ಮದ್ಯನ್ ದೇಶದ ದಿಕ್ಕಿಗೆ ತಿರುಗಿದಾಗ, ಅವರು ಹೇಳಿದರು: "ನನ್ನ ಪರಿಪಾಲಕನು (ಅಲ್ಲಾಹು) ನನ್ನನ್ನು ಸರಿಯಾದ ಮಾರ್ಗದಲ್ಲಿ ಮುನ್ನಡೆಸುವನೆಂದು ನನಗೆ ಭರವಸೆಯಿದೆ."

وَلَمَّا تَوَجَّهَ تِلۡقَآءَ مَدۡيَنَ قَالَ عَسَىٰ رَبِّيٓ أَن يَهۡدِيَنِي سَوَآءَ ٱلسَّبِيلِ ﴿٢٢﴾

23. ಅವರು ಮದ್ಯನ್ ದೇಶದ ಜಲಾಶಯದ ಬಳಿಗೆ ತಲುಪಿದಾಗ, ಅಲ್ಲಿ ತಮ್ಮ ಕುರಿಮಂದೆಗೆ ನೀರುಣಿಸುತ್ತಿರುವ ಜನರ ಗುಂಪನ್ನು ಕಂಡರು. ಅಲ್ಲಿ ಇಬ್ಬರು ಯುವತಿಯರು (ತಮ್ಮ ಕುರಿಮಂದೆಯನ್ನು) ತಡೆದು ನಿಂತಿರುವುದನ್ನೂ ಕಂಡರು. ಅವರು ಕೇಳಿದರು: "ನೀವೇನು ಮಾಡುತ್ತಿದ್ದೀರಿ?" ಆ ಯುವತಿಯರು ಉತ್ತರಿಸಿದರು: "ಈ ಕುರಿಗಾಹಿಗಳು ಇಲ್ಲಿಂದ ಹೊರಟು ಹೋಗುವ ತನಕ ನಮಗೆ ನೀರುಣಿಸಲು ಆಗುವುದಿಲ್ಲ. ನಮ್ಮ ತಂದೆ ವಯೋವೃದ್ಧರಾಗಿದ್ದಾರೆ."[1]

وَلَمَّا وَرَدَ مَآءَ مَدۡيَنَ وَجَدَ عَلَيۡهِ أُمَّةٗ مِّنَ ٱلنَّاسِ يَسۡقُونَ وَوَجَدَ مِن دُونِهِمُ ٱمۡرَأَتَيۡنِ تَذُودَانِۖ قَالَ مَا خَطۡبُكُمَاۖ قَالَتَا لَا نَسۡقِي حَتَّىٰ يُصۡدِرَ ٱلرِّعَآءُۖ وَأَبُونَا شَيۡخٞ كَبِيرٞ ﴿٢٣﴾

24. ಮೂಸಾ ಅವರ ಕುರಿಗಳಿಗೆ ನೀರುಣಿಸಿದರು. ನಂತರ ನೆರಳಿಗೆ ಹಿಂದಿರುಗಿ ಬಂದು ಪ್ರಾರ್ಥಿಸಿದರು: "ಓ ನನ್ನ ಪರಿಪಾಲಕನೇ! ನೀನು ಯಾವುದೇ ಒಳಿತನ್ನು ನನಗೆ ದಯಪಾಲಿಸಿದರೂ ನನಗೆ ಅದರ ಆವಶ್ಯಕತೆ ಇದ್ದೇ ಇದೆ."

فَسَقَىٰ لَهُمَا ثُمَّ تَوَلَّىٰٓ إِلَى ٱلظِّلِّ فَقَالَ رَبِّ إِنِّي لِمَآ أَنزَلۡتَ إِلَيَّ مِنۡ خَيۡرٖ فَقِيرٞ ﴿٢٤﴾

25. ಆಗ ಆ ಇಬ್ಬರು ಯುವತಿಯರಲ್ಲಿ ಒಬ್ಬಳು ಸಂಕೋಚದಿಂದ ನಡೆಯುತ್ತಾ ಬಂದು ಹೇಳಿದಳು: "ನೀವು ನಮ್ಮ ಕುರಿಗಳಿಗೆ ನೀರುಣಿಸಿದ್ದಕ್ಕೆ ಪ್ರತಿಫಲ ನೀಡಲು ನನ್ನ ತಂದೆ ನಿಮ್ಮನ್ನು ಕರೆಯುತ್ತಿದ್ದಾರೆ." ಮೂಸಾ ಅವಳ ತಂದೆಯ ಬಳಿಗೆ ಹೋಗಿ ನಡೆದ ಘಟನೆಯನ್ನು ವಿವರಿಸಿದಾಗ, ತಂದೆ ಹೇಳಿದರು: "ಭಯಪಡಬೇಡಿ! ನೀವು ಆ ದುಷ್ಟ ಜನರಿಂದ ಪಾರಾಗಿದ್ದೀರಿ."

فَجَآءَتۡهُ إِحۡدَىٰهُمَا تَمۡشِي عَلَى ٱسۡتِحۡيَآءٖ قَالَتۡ إِنَّ أَبِي يَدۡعُوكَ لِيَجۡزِيَكَ أَجۡرَ مَا سَقَيۡتَ لَنَاۚ فَلَمَّا جَآءَهُۥ وَقَصَّ عَلَيۡهِ ٱلۡقَصَصَ قَالَ لَا تَخَفۡۖ نَجَوۡتَ مِنَ ٱلۡقَوۡمِ ٱلظَّٰلِمِينَ ﴿٢٥﴾

26. ಆ ಇಬ್ಬರು ಯುವತಿಯರಲ್ಲಿ ಒಬ್ಬಳು ಹೇಳಿದಳು: "ಅಪ್ಪಾಜಿ!

قَالَتۡ إِحۡدَىٰهُمَا يَٰٓأَبَتِ ٱسۡتَـٔۡجِرۡهُۖ إِنَّ خَيۡرَ مَنِ

---

[1] ಆ ಯುವತಿಯವರು ಪ್ರವಾದಿ ಶುಐಬ್ (ಅವರ ಮೇಲೆ ಶಾಂತಿಯಿರಲಿ) ರವರ ಇಬ್ಬರು ಹೆಣ್ಣುಮಕ್ಕಳಾಗಿದ್ದರು. ಗಂಡಸರೊಂದಿಗೆ ಬೆರೆಯದಿರಲು ಅವರು ಗಂಡಸರು ನೀರುಣಿಸಿ ಹೊರಟುಹೋಗುವ ತನಕ ಅಲ್ಲಿ ಕಾಯುತ್ತಿದ್ದರು.

ٱسۡتَـٔۡجَرۡتَ ٱلۡقَوِيُّ ٱلۡأَمِينُ ٢٦

ಇವರನ್ನು ನೌಕರಿಗೆ ನೇಮಿಸಿಕೊಳ್ಳಿ, ಏಕೆಂದರೆ, ಬಲಿಷ್ಠರು ಮತ್ತು ಪ್ರಾಮಾಣಿಕರೇ ನೀವು ನೌಕರಿಗೆ ನೇಮಿಸಿಕೊಳ್ಳುವವರಲ್ಲಿ ಅತಿಶ್ರೇಷ್ಠರು."

قَالَ إِنِّيٓ أُرِيدُ أَنۡ أُنكِحَكَ إِحۡدَى ٱبۡنَتَيَّ هَٰتَيۡنِ عَلَىٰٓ أَن تَأۡجُرَنِي ثَمَٰنِيَ حِجَجٖۖ فَإِنۡ أَتۡمَمۡتَ عَشۡرٗا فَمِنۡ عِندِكَۖ وَمَآ أُرِيدُ أَنۡ أَشُقَّ عَلَيۡكَۚ سَتَجِدُنِيٓ إِن شَآءَ ٱللَّهُ مِنَ ٱلصَّٰلِحِينَ ٢٧

27. ತಂದೆ ಹೇಳಿದರು: "ನೀವು ಎಂಟು ವರ್ಷ ನನ್ನ ನೌಕರಿ ಮಾಡಬೇಕು ಎಂಬ (ವಧುದಕ್ಷಿಣೆಯ) ಆಧಾರದಲ್ಲಿ ನಾನು ನನ್ನ ಈ ಇಬ್ಬರು ಪುತ್ರಿಯರಲ್ಲಿ ಒಬ್ಬಳನ್ನು ನಿಮಗೆ ವಿವಾಹ ಮಾಡಿಕೊಡುತ್ತೇನೆ. ನೀವು ಹತ್ತು ವರ್ಷ ಪೂರ್ತಿಗೊಳಿಸಿದರೆ ಅದು ನಿಮ್ಮ ಕಡೆಯ ಉಪಕಾರವಾಗಿದೆ. ನಿಮಗೆ ಕಷ್ಟಕೊಡಲು ನಾನು ಬಯಸುವುದಿಲ್ಲ. ಅಲ್ಲಾಹು ಇಚ್ಛಿಸಿದರೆ ನೀವು ನನ್ನನ್ನು ನೀತಿವಂತರಲ್ಲಿ ಒಬ್ಬನಂತೆ ಕಾಣುವಿರಿ."

قَالَ ذَٰلِكَ بَيۡنِي وَبَيۡنَكَۖ أَيَّمَا ٱلۡأَجَلَيۡنِ قَضَيۡتُ فَلَا عُدۡوَٰنَ عَلَيَّۖ وَٱللَّهُ عَلَىٰ مَا نَقُولُ وَكِيلٞ ٢٨

28. ಮೂಸಾ ಹೇಳಿದರು: "ಸರಿ. ಇದು ನನ್ನ ಮತ್ತು ನಿಮ್ಮ ನಡುವಿನ ನಿರ್ಧಾರವಾಗಿದೆ. ನಾನು ಈ ಎರಡು ಅವಧಿಗಳಲ್ಲಿ ಯಾವುದನ್ನು ಪೂರ್ತಿ ಮಾಡಿದರೂ ನನ್ನ ಮೇಲೆ ಅನ್ಯಾಯವಾಗಬಾರದು. ನಾವು ಹೇಳುತ್ತಿರುವ ಮಾತುಗಳಿಗೆ ಅಲ್ಲಾಹು ಸಾಕ್ಷಿಯಾಗಿದ್ದಾನೆ."

فَلَمَّا قَضَىٰ مُوسَى ٱلۡأَجَلَ وَسَارَ بِأَهۡلِهِۦٓ ءَانَسَ مِن جَانِبِ ٱلطُّورِ نَارٗاۖ قَالَ لِأَهۡلِهِ ٱمۡكُثُوٓاْ إِنِّيٓ ءَانَسۡتُ نَارٗا لَّعَلِّيٓ ءَاتِيكُم مِّنۡهَا بِخَبَرٍ أَوۡ جَذۡوَةٖ مِّنَ ٱلنَّارِ لَعَلَّكُمۡ تَصۡطَلُونَ ٢٩

29. ನಂತರ ಮೂಸಾ ಆ ಅವಧಿಯನ್ನು ಪೂರ್ತಿ ಮಾಡಿ ತಮ್ಮ ಕುಟುಂಬ ಸಮೇತ ಪ್ರಯಾಣ ಹೊರಟಾಗ, ತೂರ್ ಪರ್ವತದ ಭಾಗದಿಂದ ಒಂದು ಬೆಂಕಿಯನ್ನು ಕಂಡರು. ಅವರು ತಮ್ಮ ಕುಟುಂಬದವರೊಡನೆ ಹೇಳಿದರು: "ನೀವು ಇಲ್ಲೇ ಇರಿ. ನನಗೆ (ದೂರದಲ್ಲಿ) ಬೆಂಕಿ ಕಾಣುತ್ತಿದೆ. ನಾನು ಅಲ್ಲಿಂದ ಏನಾದರೂ ಸುದ್ದಿಯನ್ನು ತರುತ್ತೇನೆ ಅಥವಾ ಏನಾದರೂ ದೀವಟಿಗೆಯನ್ನು ಉರಿಸಿಕೊಂಡು ಬರುತ್ತೇನೆ. ಅದರಿಂದ ನಿಮಗೆ ಚಳಿ ಕಾಯಿಸಬಹುದು."

فَلَمَّآ أَتَىٰهَا نُودِيَ مِن شَٰطِيِٕ ٱلۡوَادِ ٱلۡأَيۡمَنِ فِي ٱلۡبُقۡعَةِ ٱلۡمُبَٰرَكَةِ مِنَ ٱلشَّجَرَةِ أَن يَٰمُوسَىٰٓ إِنِّيٓ أَنَا ٱللَّهُ رَبُّ ٱلۡعَٰلَمِينَ ٣٠

30. ಮೂಸಾ ಅಲ್ಲಿಗೆ ತಲುಪಿದಾಗ, ಆ ಸಮೃದ್ಧ ಭೂಮಿಯಲ್ಲಿರುವ ಕಣಿವೆಯ ಬಲಭಾಗದ ಒಂದು ಮರದಿಂದ ಒಂದು ವಾಣಿ ಕೇಳಿಸಿತು: "ಮೂಸಾ! ನಿಶ್ಚಯವಾಗಿಯೂ ನಾನು ಸರ್ವಲೋಕಗಳ ಪರಿಪಾಲಕನಾದ ಅಲ್ಲಾಹನಾಗಿದ್ದೇನೆ."

وَأَنۡ أَلۡقِ عَصَاكَۚ فَلَمَّا رَءَاهَا تَهۡتَزُّ كَأَنَّهَا جَآنّٞ وَلَّىٰ مُدۡبِرٗا وَلَمۡ يُعَقِّبۡۚ يَٰمُوسَىٰٓ أَقۡبِلۡ وَلَا تَخَفۡۖ إِنَّكَ مِنَ ٱلۡأٓمِنِينَ ٣١

31. "ನೀವು ನಿಮ್ಮ ಕೋಲನ್ನು ಎಸೆಯಿರಿ." ಆಗ ಅದೊಂದು ಸರ್ಪವೋ ಎಂಬಂತೆ ವಿಲಿವಿಲಿ ಒದ್ದಾಡುವುದನ್ನು ಕಂಡಾಗ, ಮೂಸಾ (ಭಯದಿಂದ) ಹಿಂದೆ ತಿರುಗಿ ಓಡತೊಡಗಿದರು. ಅವರು ತಿರುಗಿ ನೋಡಲೇ ಇಲ್ಲ. "ಓ ಮೂಸಾ! ಮುಂದೆ ಬನ್ನಿ! ಭಯಪಡಬೇಡಿ. ನಿಶ್ಚಯವಾಗಿಯೂ ನೀವು ನಿರ್ಭಯರಾಗಿದ್ದೀರಿ."

32. ನೀವು ನಿಮ್ಮ ಕೈಯನ್ನು ನಿಮ್ಮ ಅಂಗಿಯಲ್ಲಿ ವಕ್ಷಕ್ಕೆ ತೂರಿಸಿರಿ. ಆಗ ಅದಕ್ಕೆ ಯಾವುದೇ ದೋಷವುಂಟಾಗದೆ ಅದು ಬೆಳ್ಳಗೆ ಹೊಳೆಯುತ್ತಾ ಹೊರಬರುತ್ತದೆ. ನಿಮಗೆ ಭಯವಾದರೆ ನಿಮ್ಮ ತೋಳನ್ನು ನಿಮ್ಮ ದೇಹಕ್ಕೆ ಒತ್ತಿ ಹಿಡಿಯಿರಿ. ಇವೆರಡು ಫರೋಹ ಮತ್ತು ಅವನ ಜನರ ಮುಖಂಡರಿಗೆ ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಎರಡು ಸಾಕ್ಷ್ಯಗಳಾಗಿವೆ. ನಿಶ್ಚಯವಾಗಿಯೂ ಅವರು ಮಹಾ ದುಷ್ಟ ಜನರಾಗಿದ್ದಾರೆ."

ٱسْلُكْ يَدَكَ فِي جَيْبِكَ تَخْرُجْ بَيْضَآءَ مِنْ غَيْرِ سُوٓءٍ وَٱضْمُمْ إِلَيْكَ جَنَاحَكَ مِنَ ٱلرَّهْبِۖ فَذَٰنِكَ بُرْهَٰنَانِ مِن رَّبِّكَ إِلَىٰ فِرْعَوْنَ وَمَلَإِيْهِۦٓۚ إِنَّهُمْ كَانُوا۟ قَوْمًا فَٰسِقِينَ ﴿٣٢﴾

33. ಮೂಸಾ ಹೇಳಿದರು: "ನನ್ನ ಪರಿಪಾಲಕನೇ! ನಾನು ಅವರಲ್ಲಿ ಒಬ್ಬನನ್ನು ಕೊಂದಿದ್ದೇನೆ. ಆದ್ದರಿಂದ ಅವರು ನನ್ನನ್ನು ಕೊಲ್ಲುವರೆಂದು ನನಗೆ ಭಯವಾಗುತ್ತಿದೆ.

قَالَ رَبِّ إِنِّي قَتَلْتُ مِنْهُمْ نَفْسًا فَأَخَافُ أَن يَقْتُلُونِ ﴿٣٣﴾

34. ನನ್ನ ತಮ್ಮ ಹಾರೂನ್ ನನಗಿಂತಲೂ ವಾಚಾಲವಾಗಿ ಮಾತನಾಡುತ್ತಾನೆ. ಆದ್ದರಿಂದ ನನ್ನ ಸತ್ಯತೆಯನ್ನು ದೃಢೀಕರಿಸಲು ಅವನನ್ನು ನನ್ನ ಸಹಾಯಕನಾಗಿ ನನ್ನೊಡನೆ ಕಳುಹಿಸು. ಅವರು ನನ್ನನ್ನು ನಿಷೇಧಿಸುವರೆಂದು ನಿಜಕ್ಕೂ ನನಗೆ ಭಯವಾಗುತ್ತಿದೆ."

وَأَخِي هَٰرُونُ هُوَ أَفْصَحُ مِنِّي لِسَانًا فَأَرْسِلْهُ مَعِيَ رِدْءًا يُصَدِّقُنِيٓۖ إِنِّيٓ أَخَافُ أَن يُكَذِّبُونِ ﴿٣٤﴾

35. ಅಲ್ಲಾಹು ಹೇಳಿದನು: "ನಿಮ್ಮ ಸಹೋದರನಿಂದ ನಾವು ನಿಮ್ಮ ತೋಳನ್ನು ಬಲಪಡಿಸುವೆವು ಮತ್ತು ನಿಮಗಿಬ್ಬರಿಗೂ ಮೇಲ್ಮೆಯನ್ನು ನೀಡುವೆವು. ನಿಮ್ಮ ಬಳಿಗೆ ತಲುಪಲೂ ಅವರಿಗೆ ಸಾಧ್ಯವಾಗದು. ನಮ್ಮ ದೃಷ್ಟಾಂತಗಳ ಕಾರಣದಿಂದ, ನೀವು ಮತ್ತು ನಿಮ್ಮ ಅನುಯಾಯಿಗಳೇ ಗೆಲ್ಲುವರು."

قَالَ سَنَشُدُّ عَضُدَكَ بِأَخِيكَ وَنَجْعَلُ لَكُمَا سُلْطَٰنًا فَلَا يَصِلُونَ إِلَيْكُمَا بِـَٔايَٰتِنَآۚ أَنتُمَا وَمَنِ ٱتَّبَعَكُمَا ٱلْغَٰلِبُونَ ﴿٣٥﴾

36. ನಂತರ ನಮ್ಮ ಸ್ಪಷ್ಟ ಸಾಕ್ಷ್ಯಾಧಾರಗಳೊಂದಿಗೆ ಮೂಸಾ ಅವರ ಬಳಿಗೆ ಬಂದಾಗ ಅವರು ಹೇಳಿದರು: "ಇದು ಕೃತಕವಾಗಿ ರಚಿಸಲಾದ ಒಂದು ಮಾಟಗಾರಿಕೆಯಾಗಿದೆ. ನಾವು ನಮ್ಮ ಪೂರ್ವಜರ ಕಾಲದಿಂದ ಇಂತಹ ಒಂದನ್ನು ಕೇಳಿಯೇ ಇಲ್ಲ."

فَلَمَّا جَآءَهُم مُّوسَىٰ بِـَٔايَٰتِنَا بَيِّنَٰتٍ قَالُوا۟ مَا هَٰذَآ إِلَّا سِحْرٌ مُّفْتَرًى وَمَا سَمِعْنَا بِهَٰذَا فِيٓ ءَابَآئِنَا ٱلْأَوَّلِينَ ﴿٣٦﴾

37. ಮೂಸಾ ಹೇಳಿದರು: "ತನ್ನ ಕಡೆಯಿಂದ ಸನ್ಮಾರ್ಗದೊಂದಿಗೆ ಬಂದವರು ಯಾರು ಮತ್ತು ಪರಲೋಕದ ಅಂತಿಮ ಫಲಿತಾಂಶವು ಯಾರ ಪಾಲಿಗೆ ಒಳಿತಾಗಿರುತ್ತದೆಯೆಂದು ನನ್ನ ಪರಿಪಾಲಕನು (ಅಲ್ಲಾಹು) ಬಹಳ ಚೆನ್ನಾಗಿ ತಿಳಿದಿದ್ದಾನೆ. ನಿಶ್ಚಯವಾಗಿಯೂ ಅಕ್ರಮಿಗಳು ಯಶಸ್ವಿಯಾಗುವುದಿಲ್ಲ."

وَقَالَ مُوسَىٰ رَبِّيٓ أَعْلَمُ بِمَن جَآءَ بِٱلْهُدَىٰ مِنْ عِندِهِۦ وَمَن تَكُونُ لَهُۥ عَٰقِبَةُ ٱلدَّارِۚ إِنَّهُۥ لَا يُفْلِحُ ٱلظَّٰلِمُونَ ﴿٣٧﴾

38. ಫರೋಹ ಹೇಳಿದನು: "ಮುಖಂಡರೇ! ನಿಮಗೆ ನನ್ನ ಹೊರತು ಬೇರೆ ದೇವರು ಇದ್ದಾನೆಂದು ನನಗೆ ತಿಳಿದಿಲ್ಲ. ಓ ಹಾಮಾನ್! ನನಗೆ ಜೇಡಿಮಣ್ಣನ್ನು ಸುಟ್ಟು (ಇಟ್ಟಿಗೆಗಳನ್ನು) ಮಾಡಿಕೊಡು. ನಂತರ ನನಗೆ ಒಂದು ಎತ್ತರದ ಗೋಪುರವನ್ನು ನಿರ್ಮಿಸಿಕೊಡು.

وَقَالَ فِرْعَوْنُ يَٰٓأَيُّهَا ٱلْمَلَأُ مَا عَلِمْتُ لَكُم مِّنْ إِلَٰهٍ غَيْرِى فَأَوْقِدْ لِي يَٰهَٰمَٰنُ عَلَى ٱلطِّينِ فَٱجْعَل لِّي صَرْحًا لَّعَلِّيٓ أَطَّلِعُ إِلَىٰٓ إِلَٰهِ مُوسَىٰ

ನಾನು (ಅದನ್ನು ಏರಿ) ಮೂಸಾನ ದೇವನನ್ನು ಒಮ್ಮೆ ಇಣುಕಿ ನೋಡಬೇಕು. ಖಂಡಿತವಾಗಿಯೂ ಅವನು ಸುಳ್ಳು ಹೇಳುವವರಲ್ಲಿ ಸೇರಿದವನೆಂದು ನಾನು ಭಾವಿಸುತ್ತೇನೆ."

وَإِنِّي لَأَظُنُّهُۥ مِنَ ٱلۡكَٰذِبِينَ ٣٨

---

39. ಅವನು ಮತ್ತು ಅವನ ಸೈನ್ಯಗಳು ಭೂಮಿಯಲ್ಲಿ ಅನ್ಯಾಯವಾಗಿ ಅಹಂಕಾರ ತೋರಿದರು. ಅವರನ್ನು ನಮ್ಮ ಬಳಿಗೆ ಮರಳಿಸಲಾಗುವುದಿಲ್ಲವೆಂದೇ ಅವರು ಭಾವಿಸಿದರು.

وَٱسۡتَكۡبَرَ هُوَ وَجُنُودُهُۥ فِي ٱلۡأَرۡضِ بِغَيۡرِ ٱلۡحَقِّ
وَظَنُّوٓاْ أَنَّهُمۡ إِلَيۡنَا لَا يُرۡجَعُونَ ٣٩

---

40. ಆದ್ದರಿಂದ ನಾವು ಅವನನ್ನು ಮತ್ತು ಅವನ ಸೈನ್ಯವನ್ನು ಹಿಡಿದು ಸಮುದ್ರಕ್ಕೆಸೆದೆವು. ಆ ದುಷ್ಟರ ಅಂತಿಮ ಫಲಿತಾಂಶವು ಹೇಗಿತ್ತೆಂದು ನೋಡಿರಿ.

فَأَخَذۡنَٰهُ وَجُنُودَهُۥ فَنَبَذۡنَٰهُمۡ فِي ٱلۡيَمِّۖ فَٱنظُرۡ
كَيۡفَ كَانَ عَٰقِبَةُ ٱلظَّٰلِمِينَ ٤٠

---

41. ನಾವು ಅವರನ್ನು ನರಕಾಗ್ನಿಗೆ ಆಮಂತ್ರಿಸುವ ಮುಖಂಡರನ್ನಾಗಿ ಮಾಡಿದೆವು. ಪುನರುತ್ಥಾನದ ದಿನದಂದು ಅವರಿಗೆ ಯಾವುದೇ ಸಹಾಯವಿರುವುದಿಲ್ಲ.

وَجَعَلۡنَٰهُمۡ أَئِمَّةٗ يَدۡعُونَ إِلَى ٱلنَّارِۖ وَيَوۡمَ
ٱلۡقِيَٰمَةِ لَا يُنصَرُونَ ٤١

---

42. ಇಹಲೋಕದಲ್ಲೇ ಶಾಪವು ಅವರನ್ನು ಹಿಂಬಾಲಿಸುವಂತೆ ನಾವು ಮಾಡಿದ್ದೇವೆ. ಪುನರುತ್ಥಾನದ ದಿನದಂದು ಅವರು ನಿಕೃಷ್ಟ ಜನರಲ್ಲಿ ಸೇರುವರು.

وَأَتۡبَعۡنَٰهُمۡ فِي هَٰذِهِ ٱلدُّنۡيَا لَعۡنَةٗۖ وَيَوۡمَ ٱلۡقِيَٰمَةِ
هُم مِّنَ ٱلۡمَقۡبُوحِينَ ٤٢

---

43. ನಾವು ಪೂರ್ವ ತಲೆಮಾರುಗಳನ್ನು ನಾಶ ಮಾಡಿದ ಬಳಿಕ, ಜನರಿಗೆ ಪುರಾವೆ, ಮಾರ್ಗದರ್ಶಿ ಮತ್ತು ದಯೆಯಾಗಿ ನಾವು ಮೂಸಾರಿಗೆ ಗ್ರಂಥವನ್ನು ನೀಡಿದೆವು. ಅವರು ಉಪದೇಶವನ್ನು ಸ್ವೀಕರಿಸಲೆಂದು.

وَلَقَدۡ ءَاتَيۡنَا مُوسَى ٱلۡكِتَٰبَ مِنۢ بَعۡدِ مَآ
أَهۡلَكۡنَا ٱلۡقُرُونَ ٱلۡأُولَىٰ بَصَآئِرَ لِلنَّاسِ وَهُدٗى
وَرَحۡمَةٗ لَّعَلَّهُمۡ يَتَذَكَّرُونَ ٤٣

---

44. (ಪ್ರವಾದಿಯವರೇ) ನಾವು ಮೂಸಾರಿಗೆ ಆಜ್ಞಾದೇಶಗಳ ಬಗ್ಗೆ ದೇವವಾಣಿ ನೀಡಿದಾಗ ನೀವು ಆ ಪರ್ವತದ ಪಶ್ಚಿಮ ಭಾಗದಲ್ಲಿರಲಿಲ್ಲ. (ಆ ಘಟನೆಗೆ) ಸಾಕ್ಷಿಯಾದವರಲ್ಲೂ ನೀವಿರಲಿಲ್ಲ.

وَمَا كُنتَ بِجَانِبِ ٱلۡغَرۡبِيِّ إِذۡ قَضَيۡنَآ إِلَىٰ مُوسَى
ٱلۡأَمۡرَ وَمَا كُنتَ مِنَ ٱلشَّٰهِدِينَ ٤٤

---

45. ಆದರೆ ನಾವು (ಮೂಸಾರ ನಂತರ) ಅನೇಕ ತಲೆಮಾರುಗಳನ್ನು ಬೆಳೆಸಿದೆವು. ಅವರ ಮೂಲಕ ದೀರ್ಘ ಕಾಲಗಳು ಕಳೆದುಹೋದವು. ಮದ್ಯನ್ ದೇಶದವರಿಗೆ ನಮ್ಮ ವಚನಗಳನ್ನು ಓದಿಕೊಡುತ್ತಾ ನೀವು ಅವರೊಂದಿಗೆ ವಾಸವಾಗಿರಲಿಲ್ಲ. ಆದರೆ ನಿಶ್ಚಯವಾಗಿಯೂ ನಾವು ಸಂದೇಶವಾಹಕರನ್ನು ಕಳುಹಿಸುವವರಾಗಿದ್ದೇವೆ.

وَلَٰكِنَّآ أَنشَأۡنَا قُرُونٗا فَتَطَاوَلَ عَلَيۡهِمُ ٱلۡعُمُرُۚ
وَمَا كُنتَ ثَاوِيٗا فِيٓ أَهۡلِ مَدۡيَنَ تَتۡلُواْ عَلَيۡهِمۡ
ءَايَٰتِنَا وَلَٰكِنَّا كُنَّا مُرۡسِلِينَ ٤٥

---

46. ನಾವು (ಮೂಸಾರನ್ನು) ಕರೆದ ಸಂದರ್ಭದಲ್ಲಿ ನೀವು ತೂರ್ ಪರ್ವತದ ಭಾಗದಲ್ಲಿರಲಿಲ್ಲ. ಆದರೆ ಅದು ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ದಯೆಯಾಗಿದೆ. ನಿಮಗಿಂತ ಮೊದಲು

وَمَا كُنتَ بِجَانِبِ ٱلطُّورِ إِذۡ نَادَيۡنَا وَلَٰكِن
رَّحۡمَةٗ مِّن رَّبِّكَ لِتُنذِرَ قَوۡمٗا مَّآ أَتَىٰهُم مِّن نَّذِيرٖ

ಯಾವುದೇ ಮುನ್ನೆಚ್ಚರಿಕೆಗಾರರು ಬಂದಿರದ ಈ ಜನರಿಗೆ ನೀವು ಮುನ್ನೆಚ್ಚರಿಕೆ ನೀಡುವುದಕ್ಕಾಗಿ. ಅವರು ಉಪದೇಶವನ್ನು ಸ್ವೀಕರಿಸಲೆಂದು.

مِّن قَبۡلِكَ لَعَلَّهُمۡ يَتَذَكَّرُونَ ٤٦

---

47. ಅವರ ಕೈಗಳು ಮುಂದಕ್ಕೆ ಕಳುಹಿಸಿರುವ ದುಷ್ಕರ್ಮಗಳ ಫಲವಾಗಿ ಅವರಿಗೇನಾದರೂ ಅನಾಹುತ ಸಂಭವಿಸಿದರೆ, "ಓ ನಮ್ಮ ಪರಿಪಾಲಕನೇ! ನಮ್ಮ ಬಳಿಗೆ ಒಬ್ಬ ಸಂದೇಶವಾಹಕರನ್ನು ಏಕೆ ಕಳುಹಿಸಲಿಲ್ಲ, ಹಾಗಿರುತ್ತಿದ್ದರೆ ನಾವು ನಿನ್ನ ವಚನಗಳನ್ನು ಅನುಸರಿಸುತ್ತಿದ್ದೆವು ಮತ್ತು ಸತ್ಯವಿಶ್ವಾಸಿಗಳಲ್ಲಿ ಸೇರುತ್ತಿದ್ದೆವು" ಎಂದು ಅವರು ಹೇಳಲಾರರು ಎಂದಿರುತ್ತಿದ್ದರೆ (ನಾವು ನಿಮ್ಮನ್ನು ಅವರಿಗೆ ಸಂದೇಶವಾಹಕರಾಗಿ ಕಳುಹಿಸುತ್ತಿರಲಿಲ್ಲ).

وَلَوۡلَآ أَن تُصِيبَهُم مُّصِيبَةُۢ بِمَا قَدَّمَتۡ أَيۡدِيهِمۡ فَيَقُولُواْ رَبَّنَا لَوۡلَآ أَرۡسَلۡتَ إِلَيۡنَا رَسُولٗا فَنَتَّبِعَ ءَايَٰتِكَ وَنَكُونَ مِنَ ٱلۡمُؤۡمِنِينَ ٤٧

---

48. ನಮ್ಮ ಕಡೆಯ ಸತ್ಯವು ಅವರಿಗೆ ತಲುಪಿದಾಗ ಅವರು ಹೇಳಿದರು: "ಮೂಸಾರಿಗೆ ನೀಡಲಾದಂತಹ ದೃಷ್ಟಾಂತಗಳನ್ನು ಇವರಿಗೇಕೆ ನೀಡಲಾಗಿಲ್ಲ?" ಆದರೆ ಇದಕ್ಕೆ ಮೊದಲು ಮೂಸಾರಿಗೆ ನೀಡಲಾದ ದೃಷ್ಟಾಂತಗಳನ್ನು ಅವರು ನಿಷೇಧಿಸಿಲ್ಲವೇ? ಅವರು ಹೇಳಿದರು: "ಇವೆರಡು (ಕುರ್‌ಆನ್ ಮತ್ತು ತೌರಾತ್) ಮಾಟಗಾರಿಕೆಗಳಾಗಿದ್ದು ಪರಸ್ಪರ ಬೆಂಬಲಿಸುತ್ತವೆ." ಅವರು ಹೇಳಿದರು: "ನಾವು ಇವೆಲ್ಲವನ್ನೂ ನಿಷೇಧಿಸುತ್ತೇವೆ."

فَلَمَّا جَآءَهُمُ ٱلۡحَقُّ مِنۡ عِندِنَا قَالُواْ لَوۡلَآ أُوتِيَ مِثۡلَ مَآ أُوتِيَ مُوسَىٰٓۚ أَوَلَمۡ يَكۡفُرُواْ بِمَآ أُوتِيَ مُوسَىٰ مِن قَبۡلُۖ قَالُواْ سِحۡرَانِ تَظَٰهَرَا وَقَالُوٓاْ إِنَّا بِكُلّٖ كَٰفِرُونَ ٤٨

---

49. ಹೇಳಿರಿ: "ನೀವು ಅವೆರಡಕ್ಕಿಂತಲೂ ಹೆಚ್ಚು ಸ್ಪಷ್ಟವಾಗಿ ಸನ್ಮಾರ್ಗವನ್ನು ತೋರಿಸುವ ಒಂದು ಗ್ರಂಥವನ್ನು ಅಲ್ಲಾಹನ ಬಳಿಯಿಂದ ತನ್ನಿರಿ. ಅದನ್ನು ನಾನು ಅನುಸರಿಸುತ್ತೇನೆ. ನೀವು ಸತ್ಯವಂತರಾಗಿದ್ದರೆ."

قُلۡ فَأۡتُواْ بِكِتَٰبٖ مِّنۡ عِندِ ٱللَّهِ هُوَ أَهۡدَىٰ مِنۡهُمَآ أَتَّبِعۡهُ إِن كُنتُمۡ صَٰدِقِينَ ٤٩

---

50. ಅವರೇನಾದರೂ ನಿಮಗೆ ಉತ್ತರ ನೀಡದಿದ್ದರೆ ತಿಳಿಯಿರಿ! ಅವರು ಅವರ ಸ್ವೇಚ್ಛೆಗಳನ್ನು ಮಾತ್ರ ಅನುಸರಿಸುತ್ತಿದ್ದಾರೆ. ಅಲ್ಲಾಹನ ಕಡೆಯ ಯಾವುದೇ ಮಾರ್ಗದರ್ಶನವನ್ನು ಪಡೆಯದೆ ತನ್ನ ಸ್ವೇಚ್ಛೆಯನ್ನು ಹಿಂಬಾಲಿಸುವವನಿಗಿಂತ ಹೆಚ್ಚು ದಾರಿತಪ್ಪಿದವನು ಯಾರು? ನಿಶ್ಚಯವಾಗಿಯೂ ಅಲ್ಲಾಹು ಅಕ್ರಮಿಗಳಾದ ಜನರಿಗೆ ಸನ್ಮಾರ್ಗ ತೋರಿಸುವುದಿಲ್ಲ.

فَإِن لَّمۡ يَسۡتَجِيبُواْ لَكَ فَٱعۡلَمۡ أَنَّمَا يَتَّبِعُونَ أَهۡوَآءَهُمۡۚ وَمَنۡ أَضَلُّ مِمَّنِ ٱتَّبَعَ هَوَىٰهُ بِغَيۡرِ هُدٗى مِّنَ ٱللَّهِۚ إِنَّ ٱللَّهَ لَا يَهۡدِي ٱلۡقَوۡمَ ٱلظَّٰلِمِينَ ٥٠

---

51. ನಾವು ಜನರಿಗೆ ನಿರಂತರವಾಗಿ ನಮ್ಮ ವಚನಗಳನ್ನು ತಲುಪಿಸುತ್ತಿದ್ದೇವೆ. ಅವರು ಉಪದೇಶ ಸ್ವೀಕರಿಸಲೆಂದು.

وَلَقَدۡ وَصَّلۡنَا لَهُمُ ٱلۡقَوۡلَ لَعَلَّهُمۡ يَتَذَكَّرُونَ ٥١

---

52. ಇದಕ್ಕೆ ಮೊದಲು ನಾವು ಯಾರಿಗೆ ಗ್ರಂಥವನ್ನು ನೀಡಿದ್ದೇವೋ ಅವರು ಇದರಲ್ಲೂ ವಿಶ್ವಾಸವಿಡುತ್ತಾರೆ.

ٱلَّذِينَ ءَاتَيۡنَٰهُمُ ٱلۡكِتَٰبَ مِن قَبۡلِهِۦ هُم بِهِۦ يُؤۡمِنُونَ ٥٢

53. ಅವರಿಗೆ ಇದನ್ನು ಓದಿಕೊಡಲಾದಾಗ ಅವರು ಹೇಳುತ್ತಾರೆ: "ನಾವು ಇದರಲ್ಲಿ ವಿಶ್ವಾಸವಿಟ್ಟಿದ್ದೇವೆ. ನಿಶ್ಚಯವಾಗಿಯೂ ಇದು ನಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಸತ್ಯವಾಗಿದೆ. ನಿಶ್ಚಯವಾಗಿಯೂ ನಾವು ಇದಕ್ಕಿಂತ ಮೊದಲೇ ಮುಸಲ್ಮಾನರಾಗಿದ್ದೆವು."

وَإِذَا يُتْلَىٰ عَلَيْهِمْ قَالُوٓا۟ ءَامَنَّا بِهِۦٓ إِنَّهُ ٱلْحَقُّ مِن
رَّبِّنَآ إِنَّا كُنَّا مِن قَبْلِهِۦ مُسْلِمِينَ ۝٥٣

54. ಅವರು ತಾಳ್ಮೆಯಿಂದ ಜೀವಿಸಿದ ಕಾರಣ ಅವರಿಗೆ ಇಮ್ಮಡಿ ಪ್ರತಿಫಲವನ್ನು ನೀಡಲಾಗುವುದು. ಅವರು ಒಳಿತಿನ ಮೂಲಕ ಕೆಡುಕನ್ನು ದೂರೀಕರಿಸುತ್ತಾರೆ ಮತ್ತು ನಾವು ಅವರಿಗೆ ನೀಡಿದ ಧನದಿಂದ ಖರ್ಚು ಮಾಡುತ್ತಾರೆ.

أُو۟لَـٰٓئِكَ يُؤْتَوْنَ أَجْرَهُم مَّرَّتَيْنِ بِمَا صَبَرُوا۟
وَيَدْرَءُونَ بِٱلْحَسَنَةِ ٱلسَّيِّئَةَ وَمِمَّا رَزَقْنَـٰهُمْ
يُنفِقُونَ ۝٥٤

55. ಅವರು ಅನಗತ್ಯ ಮಾತುಗಳನ್ನು ಕೇಳಿದರೆ (ಅದಕ್ಕೆ ಕಿವಿಗೊಡದೆ) ವಿಮುಖರಾಗುತ್ತಾರೆ. ಅವರು ಹೇಳುತ್ತಾರೆ: "ನಮಗೆ ನಮ್ಮ ಕರ್ಮಗಳು ಮತ್ತು ನಿಮಗೆ ನಿಮ್ಮ ಕರ್ಮಗಳು. ನಿಮಗೆ ಸಲಾಂ. ನಮಗೆ ಅವಿವೇಕಿಗಳ ಅಗತ್ಯವಿಲ್ಲ."

وَإِذَا سَمِعُوا۟ ٱللَّغْوَ أَعْرَضُوا۟ عَنْهُ وَقَالُوا۟ لَنَآ
أَعْمَـٰلُنَا وَلَكُمْ أَعْمَـٰلُكُمْ سَلَـٰمٌ عَلَيْكُمْ لَا
نَبْتَغِى ٱلْجَـٰهِلِينَ ۝٥٥

56. ನಿಮಗೆ ಇಷ್ಟವಿರುವವರನ್ನು ಸನ್ಮಾರ್ಗಕ್ಕೆ ಸೇರಿಸಲು ನಿಮ್ಮಿಂದ ಸಾಧ್ಯವಿಲ್ಲ.[1] ಆದರೆ ಅಲ್ಲಾಹು ಅವನು ಇಚ್ಛಿಸುವವರನ್ನು ಸನ್ಮಾರ್ಗಕ್ಕೆ ಸೇರಿಸುತ್ತಾನೆ. ಸನ್ಮಾರ್ಗದಲ್ಲಿರುವವರ ಬಗ್ಗೆ ಅವನು ಬಹಳ ಚೆನ್ನಾಗಿ ತಿಳಿದಿದ್ದಾನೆ.

إِنَّكَ لَا تَهْدِى مَنْ أَحْبَبْتَ وَلَـٰكِنَّ ٱللَّهَ
يَهْدِى مَن يَشَآءُ ۚ وَهُوَ أَعْلَمُ بِٱلْمُهْتَدِينَ ۝٥٦

57. ಅವರು ಹೇಳುತ್ತಾರೆ: "ನಾವೇನಾದರೂ ನಿಮ್ಮ ಜೊತೆಗೆ ಸೇರಿ ಸನ್ಮಾರ್ಗವನ್ನು ಹಿಂಬಾಲಿಸಿದರೆ ನಮ್ಮನ್ನು ನೆಲದಿಂದ ಕಿತ್ತೆಸೆಯಲಾಗಬಹುದು." ನಾವು ಅವರಿಗೆ ನಿರ್ಭಯವಾದ ಒಂದು ಪವಿತ್ರ ಸ್ಥಳದಲ್ಲಿ (ಹರಂನಲ್ಲಿ) ಬದುಕುವ ಅವಕಾಶ ಮಾಡಿಕೊಡಲಿಲ್ಲವೇ? ಅಲ್ಲಿಗೆ ಎಲ್ಲಾ ವಸ್ತುಗಳ ಫಲಗಳನ್ನು ನಮ್ಮ ಕಡೆಯ ಉಪಜೀವನವಾಗಿ ತರಲಾಗುತ್ತದೆ. ಆದರೆ ಅವರಲ್ಲಿ ಹೆಚ್ಚಿನವರು ಇದನ್ನು ಅರ್ಥಮಾಡಿಕೊಳ್ಳುವುದಿಲ್ಲ.

وَقَالُوٓا۟ إِن نَّتَّبِعِ ٱلْهُدَىٰ مَعَكَ نُتَخَطَّفْ مِنْ
أَرْضِنَآ ۚ أَوَلَمْ نُمَكِّن لَّهُمْ حَرَمًا ءَامِنًا يُجْبَىٰٓ
إِلَيْهِ ثَمَرَٰتُ كُلِّ شَىْءٍ رِّزْقًا مِّن لَّدُنَّا وَلَـٰكِنَّ
أَكْثَرَهُمْ لَا يَعْلَمُونَ ۝٥٧

58. ಆಡಂಬರದ ಜೀವನ ನಡೆಸುತ್ತಿದ್ದ ಎಷ್ಟೋ ಊರುಗಳನ್ನು ನಾವು ನಾಶಮಾಡಿದ್ದೇವೆ. ಅಗೋ ಅವರ ವಾಸಸ್ಥಳಗಳು! ಅವರ ಬಳಿಕ ಬಹಳ ಅಪೂರ್ವವಾಗಿಯೇ ಅಲ್ಲಿ ಜನವಾಸವುಂಟಾಗಿತ್ತು.

وَكَمْ أَهْلَكْنَا مِن قَرْيَةٍۭ بَطِرَتْ مَعِيشَتَهَا ۖ فَتِلْكَ
مَسَـٰكِنُهُمْ لَمْ تُسْكَن مِّنۢ بَعْدِهِمْ إِلَّا قَلِيلًا ۖ
وَكُنَّا نَحْنُ ٱلْوَٰرِثِينَ ۝٥٨

---

[1] ಪ್ರವಾದಿ ಮುಹಮ್ಮದರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಚಿಕ್ಕಪ್ಪ ಅಬೂತಾಲಿಬ್ ಮುಸ್ಲಿಂ ಆಗಿರಲಿಲ್ಲ. ಅವರು ಇಸ್ಲಾಂ ಸ್ವೀಕರಿಸಬೇಕೆಂದು ಪ್ರವಾದಿಯವರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅತೀವ ಆಸೆಯಿತ್ತು. ಅದಕ್ಕಾಗಿ ಅವರು ಬಹಳ ಪ್ರಯತ್ನ ಪಟ್ಟಿದ್ದರು. ಚಿಕ್ಕಪ್ಪ ಮರಣಶಯ್ಯೆಯಲ್ಲಿ ಮಲಗಿರುವಾಗಲೂ ಸಹ ಅವರು ಹತ್ತಿರ ಕುಳಿತು ನಾನಾ ರೀತಿಯಲ್ಲಿ ತಿಳಿಹೇಳುತ್ತಿದ್ದರು. ಆದರೆ ಅಬೂತಾಲಿಬ್ ಇಸ್ಲಾಂ ಸ್ವೀಕರಿಸದೆ ಸತ್ಯನಿಷೇಧಿಯಾಗಿಯೇ ನಿಧನರಾದರು. ಇದರಿಂದ ಪ್ರವಾದಿಯವರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಬಹಳ ದುಃಖವಾಯಿತು. ಆಗ ಈ ವಚನವು ಅವತೀರ್ಣವಾಯಿತು.

ನಾವೇ ಅವುಗಳ ವಾರಸುದಾರರಾಗಿದ್ದೇವೆ.

---

59. ನಿಮ್ಮ ಪರಿಪಾಲಕನು (ಅಲ್ಲಾಹು) ಊರುಗಳನ್ನು ನಾಶ ಮಾಡುವುದಿಲ್ಲ. ಎಲ್ಲಿಯವರೆಗೆಂದರೆ, ನಮ್ಮ ವಚನಗಳನ್ನು ಜನರಿಗೆ ಓದಿಕೊಡುವ ಒಬ್ಬ ಸಂದೇಶವಾಹಕರನ್ನು ಅವುಗಳಲ್ಲಿ ಪ್ರಮುಖವಾದ ಊರಿಗೆ ಕಳುಹಿಸುವ ತನಕ. ಊರುಗಳ ನಿವಾಸಿಗಳು ಅಕ್ರಮಗಳಲ್ಲಿ ಮುಳುಗಿರುವಾಗ ಮಾತ್ರ ನಾವು ಆ ಊರುಗಳನ್ನು ನಾಶ ಮಾಡುತ್ತೇವೆ.

وَمَا كَانَ رَبُّكَ مُهْلِكَ ٱلْقُرَىٰ حَتَّىٰ يَبْعَثَ
فِىٓ أُمِّهَا رَسُولًا يَتْلُوا۟ عَلَيْهِمْ ءَايَٰتِنَا ۚ وَمَا كُنَّا
مُهْلِكِى ٱلْقُرَىٰٓ إِلَّا وَأَهْلُهَا ظَٰلِمُونَ ٥٩

---

60. ನಿಮಗೆ ಏನಾದರೂ ನೀಡಲಾಗಿದ್ದರೆ ಅದು ಇಹಲೋಕ ಜೀವನದ ಆನಂದ ಮತ್ತು ಅಲಂಕಾರ ಮಾತ್ರವಾಗಿದೆ. ಅಲ್ಲಾಹನ ಬಳಿ ಏನಿದೆಯೋ ಅದು ಅತ್ಯುತ್ತಮ ಮತ್ತು ಶಾಶ್ವತವಾಗಿದೆ. ನೀವು ಆಲೋಚಿಸುವುದಿಲ್ಲವೇ?

وَمَآ أُوتِيتُم مِّن شَىْءٍ فَمَتَٰعُ ٱلْحَيَوٰةِ ٱلدُّنْيَا
وَزِينَتُهَا ۚ وَمَا عِندَ ٱللَّهِ خَيْرٌ وَأَبْقَىٰٓ ۚ أَفَلَا
تَعْقِلُونَ ٦٠

---

61. ನಾವು ಒಬ್ಬನಿಗೆ ಒಳ್ಳೆಯ ವಾಗ್ದಾನವನ್ನು ನೀಡಿ ನಂತರ ಅವನು ಅದನ್ನು ಸತ್ಯವಾಗಿ ಕಾಣುತ್ತಾನೆ. ಇನ್ನೊಬ್ಬನಿಗೆ ನಾವು ಇಹಲೋಕ ಜೀವನದ ಆನಂದವನ್ನು ನೀಡಿ ನಂತರ ಅವನನ್ನು ಪುನರುತ್ಥಾನದ ದಿನದಂದು ಶಿಕ್ಷೆಗೆ ಹಾಜರುಗೊಳಿಸಲಾಗುತ್ತದೆ. ಇವರಿಬ್ಬರು ಸಮಾನರೇ?

أَفَمَن وَعَدْنَٰهُ وَعْدًا حَسَنًا فَهُوَ لَٰقِيهِ كَمَن
مَّتَّعْنَٰهُ مَتَٰعَ ٱلْحَيَوٰةِ ٱلدُّنْيَا ثُمَّ هُوَ يَوْمَ ٱلْقِيَٰمَةِ
مِنَ ٱلْمُحْضَرِينَ ٦١

---

62. ಅಲ್ಲಾಹು ಅವರನ್ನು ಕರೆಯುವ ದಿನ. ಅವನು ಕೇಳುವನು: "ನೀವು ನನ್ನ ಸಹಭಾಗಿಗಳೆಂದು ವಾದಿಸುತ್ತಿದ್ದ ಆ ನಿಮ್ಮ ದೇವರುಗಳು ಎಲ್ಲಿದ್ದಾರೆ?"

وَيَوْمَ يُنَادِيهِمْ فَيَقُولُ أَيْنَ شُرَكَآءِىَ ٱلَّذِينَ
كُنتُمْ تَزْعُمُونَ ٦٢

---

63. ಯಾರ ಮೇಲೆ ಶಿಕ್ಷೆಯ ವಚನವು ಖಾತ್ರಿಯಾಗಿದೆಯೋ ಅವರು (ಸತ್ಯನಿಷೇಧಿಗಳ ಮುಖಂಡರು) ಹೇಳುವರು: "ನಮ್ಮ ಪರಿಪಾಲಕನೇ! ನಾವು ದಾರಿತಪ್ಪಿಸಿದ್ದು ಇವರನ್ನೇ. ನಾವು ದಾರಿ ತಪ್ಪಿದಂತೆಯೇ ಇವರನ್ನೂ ದಾರಿತಪ್ಪಿಸಿದೆವು. ನಾವು ಇವರಿಂದ ಸಂಪೂರ್ಣ ಮುಕ್ತರಾಗಿದ್ದೇವೆ. ಅವರು ನಮ್ಮನ್ನು ಆರಾಧಿಸುತ್ತಲೇ ಇರಲಿಲ್ಲ."

قَالَ ٱلَّذِينَ حَقَّ عَلَيْهِمُ ٱلْقَوْلُ رَبَّنَا هَٰٓؤُلَآءِ
ٱلَّذِينَ أَغْوَيْنَآ أَغْوَيْنَٰهُمْ كَمَا غَوَيْنَا ۖ تَبَرَّأْنَآ
إِلَيْكَ ۖ مَا كَانُوٓا۟ إِيَّانَا يَعْبُدُونَ ٦٣

---

64. ಅವರೊಡನೆ ಹೇಳಲಾಗುವುದು: "ನೀವು ಅಲ್ಲಾಹನೊಡನೆ ಸಹಭಾಗಿಗಳನ್ನಾಗಿ ಮಾಡಿದ (ನಿಮ್ಮ ದೇವರುಗಳನ್ನು) ಕರೆದು ಪ್ರಾರ್ಥಿಸಿರಿ." ಆಗ ಅವರು ಅವರನ್ನು ಕರೆದು ಪ್ರಾರ್ಥಿಸುವರು. ಆದರೆ ಅವರು (ದೇವರುಗಳು) ಅವರಿಗೆ ಉತ್ತರ ನೀಡುವುದಿಲ್ಲ. ಅವರೆಲ್ಲರೂ ಶಿಕ್ಷೆಯನ್ನು ನೋಡುವರು. ಅವರೇನಾದರೂ ಸನ್ಮಾರ್ಗವನ್ನು ಸ್ವೀಕರಿಸುತ್ತಿದ್ದರೆ ಎಷ್ಟು ಚೆನ್ನಾಗಿತ್ತು!

وَقِيلَ ٱدْعُوا۟ شُرَكَآءَكُمْ فَدَعَوْهُمْ فَلَمْ
يَسْتَجِيبُوا۟ لَهُمْ وَرَأَوُا۟ ٱلْعَذَابَ ۚ لَوْ أَنَّهُمْ كَانُوا۟
يَهْتَدُونَ ٦٤

65. ಅಲ್ಲಾಹು ಅವರನ್ನು ಕರೆಯುವ ದಿನ. ಅವನು ಕೇಳುವನು: “ನೀವು ಸಂದೇಶವಾಹಕರಿಗೆ ಏನು ಉತ್ತರ ನೀಡಿದಿರಿ?”

وَيَوۡمَ يُنَادِيهِمۡ فَيَقُولُ مَاذَآ أَجَبۡتُمُ ٱلۡمُرۡسَلِينَ ٦٥

66. ಅಂದು ಅವರಿಗೆ (ಅವರು ಹೇಳುತ್ತಿದ್ದ) ಎಲ್ಲಾ ಸಾಕ್ಷ್ಯಗಳು ಅಸ್ಪಷ್ಟವಾಗಿ ಬಿಡುವುವು. ಅವರು ಪರಸ್ಪರ ಪ್ರಶ್ನಿಸುವುದನ್ನೂ ಮಾಡಲಾರರು.

فَعَمِيَتۡ عَلَيۡهِمُ ٱلۡأَنۢبَآءُ يَوۡمَئِذٖ فَهُمۡ لَا يَتَسَآءَلُونَ ٦٦

67. ಆದರೆ ಯಾರು ಪಶ್ಚಾತ್ತಾಪಪಟ್ಟು, ಸತ್ಯವಿಶ್ವಾಸಿಯಾಗಿ, ಸತ್ಕರ್ಮವೆಸಗುತ್ತಾನೋ ಅವನು ಖಂಡಿತ ಯಶಸ್ವಿಯಾದವರಲ್ಲಿ ಸೇರುವನು.

فَأَمَّا مَن تَابَ وَءَامَنَ وَعَمِلَ صَٰلِحٗا فَعَسَىٰٓ أَن يَكُونَ مِنَ ٱلۡمُفۡلِحِينَ ٦٧

68. ನಿಮ್ಮ ಪರಿಪಾಲಕನು (ಅಲ್ಲಾಹು) ಅವನು ಇಚ್ಛಿಸುವುದನ್ನು ಸೃಷ್ಟಿಸುತ್ತಾನೆ ಮತ್ತು ಅವನು ಇಚ್ಛಿಸುವುದನ್ನು ಆರಿಸುತ್ತಾನೆ. ಆದರೆ ಅವರಲ್ಲಿ ಯಾರಿಗೂ ಆಯ್ಕೆ ಮಾಡುವ ಅಧಿಕಾರವಿಲ್ಲ. ಅವರು ಮಾಡುವ ಸಹಭಾಗಿತ್ವದಿಂದ (ಶಿರ್ಕ್‌ನಿಂದ) ಅಲ್ಲಾಹು ಎಷ್ಟೋ ಪರಿಶುದ್ಧನು ಮತ್ತು ಪರಮೋನ್ನತನಾಗಿದ್ದಾನೆ.

وَرَبُّكَ يَخۡلُقُ مَا يَشَآءُ وَيَخۡتَارُۗ مَا كَانَ لَهُمُ ٱلۡخِيَرَةُۚ سُبۡحَٰنَ ٱللَّهِ وَتَعَٰلَىٰ عَمَّا يُشۡرِكُونَ ٦٨

69. ಅವರ ಹೃದಯಗಳು ಅಡಗಿಸಿಡುವುದನ್ನು ಮತ್ತು ಅವರು ಬಹಿರಂಗಪಡಿಸುವುದನ್ನು ನಿಮ್ಮ ಪರಿಪಾಲಕನು (ಅಲ್ಲಾಹು) ತಿಳಿಯುತ್ತಾನೆ.

وَرَبُّكَ يَعۡلَمُ مَا تُكِنُّ صُدُورُهُمۡ وَمَا يُعۡلِنُونَ ٦٩

70. ಅವನೇ ಅಲ್ಲಾಹು! ಅವನ ಹೊರತು ಆರಾಧನೆಗೆ ಅರ್ಹರಾದ ಬೇರೆ ದೇವರಿಲ್ಲ. ಇಹಲೋಕದಲ್ಲೂ ಪರಲೋಕದಲ್ಲೂ ಅವನಿಗೇ ಸರ್ವಸ್ತುತಿ. ಆಜ್ಞಾಧಿಕಾರವು ಅವನಿಗೆ ಸೇರಿದ್ದು. ನಿಮ್ಮನ್ನು ಅವನ ಬಳಿಗೇ ಮರಳಿಸಲಾಗುವುದು.

وَهُوَ ٱللَّهُ لَآ إِلَٰهَ إِلَّا هُوَۖ لَهُ ٱلۡحَمۡدُ فِي ٱلۡأُولَىٰ وَٱلۡأٓخِرَةِۖ وَلَهُ ٱلۡحُكۡمُ وَإِلَيۡهِ تُرۡجَعُونَ ٧٠

71. ಹೇಳಿರಿ: “ನೀವು ಆಲೋಚಿಸಿ ನೋಡಿದ್ದೀರಾ? ಅಲ್ಲಾಹು ನಿಮಗೆ ಪುನರುತ್ಥಾನದ ದಿನದವರೆಗೆ ಕೇವಲ ರಾತ್ರಿಯನ್ನು ಮಾತ್ರ ಮುಂದುವರಿಸಿದರೆ ಅಲ್ಲಾಹನ ಹೊರತಾಗಿ ನಿಮಗೆ ಹಗಲಿನ ಬೆಳಕನ್ನು ತಂದುಕೊಡುವ ಬೇರೆ ದೇವರು ಯಾರಾದರೂ ಇದ್ದಾರೆಯೇ? ಏನು ನೀವು ಕಿವಿಗೊಡುವುದಿಲ್ಲವೇ?”

قُلۡ أَرَءَيۡتُمۡ إِن جَعَلَ ٱللَّهُ عَلَيۡكُمُ ٱلَّيۡلَ سَرۡمَدًا إِلَىٰ يَوۡمِ ٱلۡقِيَٰمَةِ مَنۡ إِلَٰهٌ غَيۡرُ ٱللَّهِ يَأۡتِيكُم بِضِيَآءٍۚ أَفَلَا تَسۡمَعُونَ ٧١

72. ಹೇಳಿರಿ: “ನೀವು ಆಲೋಚಿಸಿ ನೋಡಿದ್ದೀರಾ! ಅಲ್ಲಾಹು ನಿಮಗೆ ಪುನರುತ್ಥಾನದ ದಿನದವರೆಗೆ ಕೇವಲ ಹಗಲನ್ನು ಮಾತ್ರ ಮುಂದುವರಿಸಿದರೆ ನಿಮಗೆ ವಿಶ್ರಾಂತಿ ಪಡೆಯುಲು ರಾತ್ರಿಯನ್ನು ತಂದುಕೊಡುವ ದೇವರು ಅಲ್ಲಾಹನ ಹೊರತಾಗಿ ಬೇರೆ ಯಾರಾದರೂ ಇದ್ದಾರೆಯೇ? ಏನು ನೀವು ಕಣ್ತೆರೆದು ನೋಡುವುದಿಲ್ಲವೇ?”

قُلۡ أَرَءَيۡتُمۡ إِن جَعَلَ ٱللَّهُ عَلَيۡكُمُ ٱلنَّهَارَ سَرۡمَدًا إِلَىٰ يَوۡمِ ٱلۡقِيَٰمَةِ مَنۡ إِلَٰهٌ غَيۡرُ ٱللَّهِ يَأۡتِيكُم بِلَيۡلٖ تَسۡكُنُونَ فِيهِۚ أَفَلَا تُبۡصِرُونَ ٧٢

73. ರಾತ್ರಿಯಲ್ಲಿ ನೀವು ವಿಶ್ರಾಂತಿ ಪಡೆಯಲು ಮತ್ತು ಹಗಲಲ್ಲಿ ಅವನ ಔದಾರ್ಯದಿಂದ ನಿಮ್ಮ ಉಪಜೀವನವನ್ನು ಹುಡುಕಲು ಹಾಗೂ ನೀವು ಕೃತಜ್ಞರಾಗಿ ಜೀವಿಸಲು ಅವನು ತನ್ನ ದಯೆಯಿಂದ ನಿಮಗೆ ರಾತ್ರಿ ಮತ್ತು ಹಗಲನ್ನು ಮಾಡಿಕೊಟ್ಟಿದ್ದಾನೆ.

وَمِن رَّحۡمَتِهِۦ جَعَلَ لَكُمُ ٱلَّيۡلَ وَٱلنَّهَارَ لِتَسۡكُنُواْ فِيهِ وَلِتَبۡتَغُواْ مِن فَضۡلِهِۦ وَلَعَلَّكُمۡ تَشۡكُرُونَ ﴿٧٣﴾

74. ಅಲ್ಲಾಹು ಅವರನ್ನು ಕರೆಯುವ ದಿನ. ಅವನು ಕೇಳುವನು: "ನೀವು ನನ್ನ ಸಹಭಾಗಿಗಳೆಂದು ವಾದಿಸುತ್ತಿದ್ದ ನಿಮ್ಮ ದೇವರುಗಳು ಎಲ್ಲಿದ್ದಾರೆ?"

وَيَوۡمَ يُنَادِيهِمۡ فَيَقُولُ أَيۡنَ شُرَكَآءِيَ ٱلَّذِينَ كُنتُمۡ تَزۡعُمُونَ ﴿٧٤﴾

75. ನಾವು ಎಲ್ಲಾ ಸಮುದಾಯಗಳಿಂದಲೂ ಒಬ್ಬೊಬ್ಬ ಸಾಕ್ಷಿಯನ್ನು ಬೇರ್ಪಡಿಸುವೆವು. ನಂತರ ನಾವು ಹೇಳುವೆವು: "ನಿಮ್ಮ ಸಾಕ್ಷ್ಯವನ್ನು ತನ್ನಿರಿ." ಆಗ ಸತ್ಯವಿರುವುದು ಅಲ್ಲಾಹನಲ್ಲಿ ಎಂದು ಅವರಿಗೆ ಮನದಟ್ಟಾಗುವುದು. ಅವರು ಸುಳ್ಳು ಆರೋಪಗಳೆಲ್ಲವೂ ಅವರನ್ನು ಬಿಟ್ಟು ಹೋಗುವುವು.

وَنَزَعۡنَا مِن كُلِّ أُمَّةٖ شَهِيدٗا فَقُلۡنَا هَاتُواْ بُرۡهَٰنَكُمۡ فَعَلِمُوٓاْ أَنَّ ٱلۡحَقَّ لِلَّهِ وَضَلَّ عَنۡهُم مَّا كَانُواْ يَفۡتَرُونَ ﴿٧٥﴾

76. ನಿಶ್ಚಯವಾಗಿಯೂ ಕಾರೂನ್ ಮೂಸಾರ ಜನರಲ್ಲಿ ಸೇರಿದವನಾಗಿದ್ದನು.[1] ಅವನು ಅವರ ಮೇಲೆ ಅತಿರೇಕವೆಸಗುತ್ತಿದ್ದನು. ನಾವು ಅವನಿಗೆ ಎಷ್ಟು ದೊಡ್ಡ ದೊಡ್ಡ ಖಜಾನೆಗಳನ್ನು ನೀಡಿದ್ದೇವೆಂದರೆ, ಬಲಿಷ್ಠರಾದ ಹಲವಾರು ಜನರು ಕೂಡ ಬಹಳ ಕಷ್ಟದಿಂದಲೇ ಅವುಗಳ ಕೀಲಿಕೈಗಳನ್ನು ಹೊತ್ತು ಸಾಗುತ್ತಿದ್ದರು. ಅವನ ಜನರು ಅವನೊಡನೆ ಹೇಳಿದ ಸಂದರ್ಭ: "ಅಟ್ಟಹಾಸ ಮೆರೆಯಬೇಡ. ಖಂಡಿತನಾಗಿಯೂ ಅಟ್ಟಹಾಸ ಮೆರೆಯುವವರನ್ನು ಅಲ್ಲಾಹು ಇಷ್ಟಪಡುವುದಿಲ್ಲ.

إِنَّ قَٰرُونَ كَانَ مِن قَوۡمِ مُوسَىٰ فَبَغَىٰ عَلَيۡهِمۡۖ وَءَاتَيۡنَٰهُ مِنَ ٱلۡكُنُوزِ مَآ إِنَّ مَفَاتِحَهُۥ لَتَنُوٓأُ بِٱلۡعُصۡبَةِ أُوْلِي ٱلۡقُوَّةِ إِذۡ قَالَ لَهُۥ قَوۡمُهُۥ لَا تَفۡرَحۡۖ إِنَّ ٱللَّهَ لَا يُحِبُّ ٱلۡفَرِحِينَ ﴿٧٦﴾

77. ಅಲ್ಲಾಹು ನಿನಗೆ ನೀಡಿದ ಆಸ್ತಿಯಿಂದ ಪರಲೋಕದ ಯಶಸ್ಸನ್ನು ಅರಸು. ನಿನ್ನ ಇಹಲೋಕದ ಪಾಲನ್ನೂ ಮರೆಯಬೇಡ. ಅಲ್ಲಾಹು ನಿನಗೆ ಒಳಿತು ಮಾಡಿದಂತೆ ನೀನು ಜನರಿಗೂ ಒಳಿತು ಮಾಡು. ಭೂಮಿಯಲ್ಲಿ ಕಿಡಿಗೇಡಿತನ ಮಾಡಲು ಮುಂದಾಗಬೇಡ. ನಿಶ್ಚಯವಾಗಿಯೂ ಕಿಡಿಗೇಡಿತನ ಮಾಡುವವರನ್ನು ಅಲ್ಲಾಹು ಇಷ್ಟಪಡುವುದಿಲ್ಲ."

وَٱبۡتَغِ فِيمَآ ءَاتَىٰكَ ٱللَّهُ ٱلدَّارَ ٱلۡأٓخِرَةَۖ وَلَا تَنسَ نَصِيبَكَ مِنَ ٱلدُّنۡيَاۖ وَأَحۡسِن كَمَآ أَحۡسَنَ ٱللَّهُ إِلَيۡكَۖ وَلَا تَبۡغِ ٱلۡفَسَادَ فِي ٱلۡأَرۡضِۖ إِنَّ ٱللَّهَ لَا يُحِبُّ ٱلۡمُفۡسِدِينَ ﴿٧٧﴾

78. ಅವನು ಹೇಳಿದನು: "ನನ್ನ ಜ್ಞಾನದ ಆಧಾರದಲ್ಲೇ ಇವೆಲ್ಲವನ್ನೂ ನನಗೆ ನೀಡಲಾಗಿದೆ." ಅವನಿಗಿಂತಲೂ ಹೆಚ್ಚು ಶಕ್ತಿಶಾಲಿಗಳಾಗಿದ್ದ ಮತ್ತು ಅವನಿಗಿಂತ ಹೆಚ್ಚು ಜನಬಲವಿದ್ದ ಎಷ್ಟೋ ತಲೆಮಾರುಗಳನ್ನು ಅಲ್ಲಾಹು ಅವನಿಗಿಂತ ಮೊದಲು ನಾಶ

قَالَ إِنَّمَآ أُوتِيتُهُۥ عَلَىٰ عِلۡمٍ عِندِيٓۚ أَوَلَمۡ يَعۡلَمۡ أَنَّ ٱللَّهَ قَدۡ أَهۡلَكَ مِن قَبۡلِهِۦ مِنَ ٱلۡقُرُونِ مَنۡ هُوَ أَشَدُّ مِنۡهُ قُوَّةٗ وَأَكۡثَرُ جَمۡعٗاۚ وَلَا يُسۡـَٔلُ عَن

[1] ಕಾರೂನ್ ಇಸ್ರಾಯೇಲ್ ಜನಾಂಗದಲ್ಲಿ ಸೇರಿದವನು. ಅಲ್ಲಾಹು ಅವನಿಗೆ ಅಪಾರ ಐಶ್ವರ್ಯವನ್ನು ನೀಡಿದಾಗ ಅವನು ಅಲ್ಲಾಹನನ್ನು ಮರೆತು ಜನರ ಮೇಲೆ ಅತಿರೇಕವೆಸಗತೊಡಗಿದನು.

ಮಾಡಿದ್ದಾನೆಂದು ಅವನು ತಿಳಿದಿಲ್ಲವೇ? ಅಪರಾಧಿಗಳೊಡನೆ ಅವರ ಅಪರಾಧಗಳ ಕುರಿತು ಪ್ರಶ್ನಿಸಲಾಗುವುದಿಲ್ಲ.

ذُنُوبِهِمُ ٱلْمُجْرِمُونَ ﴿٧٨﴾

---

79. ನಂತರ ಅವನು (ಕಾರೂನ್) ತನ್ನ ಎಲ್ಲಾ ಅಲಂಕಾರಗಳೊಂದಿಗೆ ಜನರ ನಡುವಿಗೆ ಬಂದನು. ಇಹಲೋಕ ಜೀವನವನ್ನು ಬಯಸುವವರು ಹೇಳಿದರು: “ಕಾರೂನನಿಗೆ ನೀಡಲಾಗಿರುವ ಸಂಪತ್ತು ನಮಗೂ ನೀಡಲಾಗಿದ್ದರೆ ಎಷ್ಟು ಚೆನ್ನಾಗಿತ್ತು! ನಿಜಕ್ಕೂ ಅವನು ಮಹಾ ಅದೃಷ್ಟವಂತನೇ ಸರಿ.”

فَخَرَجَ عَلَىٰ قَوْمِهِۦ فِى زِينَتِهِۦ ۖ قَالَ ٱلَّذِينَ يُرِيدُونَ ٱلْحَيَوٰةَ ٱلدُّنْيَا يَـٰلَيْتَ لَنَا مِثْلَ مَآ أُوتِىَ قَـٰرُونُ إِنَّهُۥ لَذُو حَظٍّ عَظِيمٍ ﴿٧٩﴾

---

80. ಆದರೆ ಜ್ಞಾನ ನೀಡಲಾದವರು ಹೇಳಿದರು: “ನಿಮಗೆ ದುರದೃಷ್ಟ ಕಾದಿದೆ! ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿ-ದವರಿಗೆ ಅಲ್ಲಾಹನ ಪ್ರತಿಫಲವೇ ಅತ್ಯುತ್ತಮವಾಗಿದೆ. ತಾಳ್ಮೆ ಮತ್ತು ಸ್ಥೈರ್ಯದಿಂದ ಬದುಕುವವರಿಗೆ ಮಾತ್ರ ಇದನ್ನು ನೀಡಲಾಗುತ್ತದೆ.”

وَقَالَ ٱلَّذِينَ أُوتُوا۟ ٱلْعِلْمَ وَيْلَكُمْ ثَوَابُ ٱللَّهِ خَيْرٌ لِّمَنْ ءَامَنَ وَعَمِلَ صَـٰلِحًا ۚ وَلَا يُلَقَّىٰهَآ إِلَّا ٱلصَّـٰبِرُونَ ﴿٨٠﴾

---

81. ನಂತರ ನಾವು ಅವನನ್ನು ಮತ್ತು ಅವನ ಅರಮನೆಯನ್ನು ಭೂಮಿಯಲ್ಲಿ ಹುದುಗಿಸಿದೆವು. ಆಗ ಅಲ್ಲಾಹನ ಹೊರತು ಅವನಿಗೆ ಸಹಾಯ ಮಾಡುವ ಯಾವುದೇ ಜನರೂ ಇರಲಿಲ್ಲ. ಸ್ವಯಂ ರಕ್ಷಣೆ ಪಡೆಯಲೂ ಅವನಿಗೆ ಸಾಧ್ಯವಾಗಲಿಲ್ಲ.

فَخَسَفْنَا بِهِۦ وَبِدَارِهِ ٱلْأَرْضَ فَمَا كَانَ لَهُۥ مِن فِئَةٍ يَنصُرُونَهُۥ مِن دُونِ ٱللَّهِ وَمَا كَانَ مِنَ ٱلْمُنتَصِرِينَ ﴿٨١﴾

---

82. ನಿನ್ನೆ ಅವನ ಸ್ಥಾನಮಾನಕ್ಕೆ ತಲುಪಲು ಆಸೆಪಟ್ಟವರು ಇಂದು ಹೀಗೆ ಹೇಳತೊಡಗಿದರು: “ನಿಮಗೆ ಕಾಣುವುದಿಲ್ಲವೇ! ಅಲ್ಲಾಹು ಅವನ ದಾಸರಲ್ಲಿ ಅವನು ಇಚ್ಛಿಸುವವರಿಗೆ ಉಪಜೀವನವನ್ನು ವಿಶಾಲಗೊಳಿಸುತ್ತಾನೆ ಮತ್ತು ಅವನು ಇಚ್ಛಿಸುವವರಿಗೆ ಇಕ್ಕ-ಟ್ಟುಗೊಳಿಸುತ್ತಾನೆ. ಒಂದು ವೇಳೆ ಅಲ್ಲಾಹು ನಮ್ಮ ಮೇಲೆ ಔದಾರ್ಯ ತೋರದಿರುತ್ತಿದ್ದರೆ ನಮ್ಮನ್ನೂ ಭೂಮಿಯಲ್ಲಿ ಹುದು-ಗಿಸುತ್ತಿದ್ದನು! ನಿಮಗೆ ಕಾಣುವುದಿಲ್ಲವೇ! ಸತ್ಯನಿಷೇಧಿಗಳು ಎಂದಿಗೂ ಯಶಸ್ವಿಯಾಗುವುದಿಲ್ಲ.”

وَأَصْبَحَ ٱلَّذِينَ تَمَنَّوْا۟ مَكَانَهُۥ بِٱلْأَمْسِ يَقُولُونَ وَيْكَأَنَّ ٱللَّهَ يَبْسُطُ ٱلرِّزْقَ لِمَن يَشَآءُ مِنْ عِبَادِهِۦ وَيَقْدِرُ ۖ لَوْلَآ أَن مَّنَّ ٱللَّهُ عَلَيْنَا لَخَسَفَ بِنَا ۖ وَيْكَأَنَّهُۥ لَا يُفْلِحُ ٱلْكَـٰفِرُونَ ﴿٨٢﴾

---

83. ನಾವು ಆ ಪರಲೋಕ ಭವನವನ್ನು ಭೂಮಿಯಲ್ಲಿ ಅಹಂಕಾರ ತೋರದ ಮತ್ತು ಕಿಡಿಗೇಡಿತನ ಮಾಡದ ಜನರಿಗೆ ಕೊಟ್ಟುಬಿಡುವೆವು. ಅಂತಿಮ ಫಲಿತಾಂಶವಿರುವುದು ದೇವಭ-ಯವುಳ್ಳರಿಗೆ ಮಾತ್ರ.

تِلْكَ ٱلدَّارُ ٱلْـَٔاخِرَةُ نَجْعَلُهَا لِلَّذِينَ لَا يُرِيدُونَ عُلُوًّا فِى ٱلْأَرْضِ وَلَا فَسَادًا ۚ وَٱلْعَـٰقِبَةُ لِلْمُتَّقِينَ ﴿٨٣﴾

---

84. ಯಾರು ಒಳಿತನ್ನು ತರುತ್ತಾನೋ ಅವನಿಗೆ ಅದಕ್ಕಿಂತಲೂ ಶ್ರೇಷ್ಠವಾದುದು ದೊರೆಯುತ್ತದೆ. ಯಾರಾದರೂ ಕೆಡುಕನ್ನು ತಂದರೆ—ಕೆಡುಕು ಮಾಡುವವರಿಗೆ ಅವರು ಮಾಡಿದ ಕೆಡುಕಿನ ಪ್ರತಿಫಲವಲ್ಲದೆ ಬೇರೇನೂ ನೀಡಲಾಗುವುದಿಲ್ಲ.

مَن جَآءَ بِٱلْحَسَنَةِ فَلَهُۥ خَيْرٌ مِّنْهَا ۖ وَمَن جَآءَ بِٱلسَّيِّئَةِ فَلَا يُجْزَى ٱلَّذِينَ عَمِلُوا۟ ٱلسَّيِّـَٔاتِ إِلَّا مَا كَانُوا۟ يَعْمَلُونَ ﴿٨٤﴾

85. ನಿಶ್ಚಯವಾಗಿಯೂ ನಿಮಗೆ ಈ ಕುರ್‌ಆನನ್ನು ಅವತೀರ್ಣಗೊಳಿಸಿದವನು ಯಾರೋ ಅವನು ನಿಮ್ಮನ್ನು ಮೊದಲಿನ ಸ್ಥಳಕ್ಕೇ (ಮಕ್ಕಾ) ಹಿಂದಿರುಗಿಸುವನು. ಹೇಳಿರಿ: “ಸನ್ಮಾರ್ಗವನ್ನು ತಂದವರು ಯಾರು ಮತ್ತು ಸ್ಪಷ್ಟ ದುರ್ಮಾರ್ಗದಲ್ಲಿರುವವರು ಯಾರು ಎಂದು ನನ್ನ ಪರಿಪಾಲಕ (ಅಲ್ಲಾಹು) ಬಹಳ ಚೆನ್ನಾಗಿ ತಿಳಿದಿದ್ದಾನೆ.”

إِنَّ ٱلَّذِى فَرَضَ عَلَيْكَ ٱلْقُرْءَانَ لَرَآدُّكَ إِلَىٰ مَعَادٍ ۚ قُل رَّبِّىٓ أَعْلَمُ مَن جَآءَ بِٱلْهُدَىٰ وَمَنْ هُوَ فِى ضَلَٰلٍ مُّبِينٍ ﴿٨٥﴾

86. ನಿಮಗೆ ಗ್ರಂಥವು ಅವತೀರ್ಣವಾಗಬಹುದೆಂದು ನೀವು ಎಂದಿಗೂ ಭಾವಿಸಿರಲಿಲ್ಲ. ಆದರೆ ಇದು ನಿಮ್ಮ ಪರಿಪಾಲಕನ (ಅಲ್ಲಾಹನ) ದಯೆಯಾಗಿದೆ. ಆದ್ದರಿಂದ ನೀವು ಎಂದಿಗೂ ಸತ್ಯನಿಷೇಧಿಗಳಿಗೆ ಸಹಾಯ ಮಾಡುವವರಾಗಬೇಡಿ.

وَمَا كُنتَ تَرْجُوٓا۟ أَن يُلْقَىٰٓ إِلَيْكَ ٱلْكِتَٰبُ إِلَّا رَحْمَةً مِّن رَّبِّكَ ۖ فَلَا تَكُونَنَّ ظَهِيرًا لِّلْكَٰفِرِينَ ﴿٨٦﴾

87. ಅಲ್ಲಾಹನ ವಚನಗಳು ನಿಮಗೆ ಅವತೀರ್ಣವಾದ ಬಳಿಕ ಅದನ್ನು ಜನರಿಗೆ ತಲುಪಿಸುವುದರಿಂದ ಅವರು ನಿಮ್ಮನ್ನು ತಡೆಯುವಂತಾಗದಿರಲಿ. ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಗೆ ಜನರನ್ನು ಕರೆಯಿರಿ. ನೀವು ಎಂದಿಗೂ ಬಹುದೇವಾರಾಧಕರಲ್ಲಿ ಸೇರಬೇಡಿ.

وَلَا يَصُدُّنَّكَ عَنْ ءَايَٰتِ ٱللَّهِ بَعْدَ إِذْ أُنزِلَتْ إِلَيْكَ ۖ وَٱدْعُ إِلَىٰ رَبِّكَ ۖ وَلَا تَكُونَنَّ مِنَ ٱلْمُشْرِكِينَ ﴿٨٧﴾

88. ಅಲ್ಲಾಹನ ಜೊತೆಗೆ ಬೇರೆ ದೇವರುಗಳನ್ನು ಕರೆದು ಪ್ರಾರ್ಥಿಸಬೇಡಿ. ಅವನ ಹೊರತು ಆರಾಧನೆಗೆ ಅರ್ಹರಾದ ಬೇರೆ ದೇವರಿಲ್ಲ. ಅವನ ಮುಖದ (ಸಾರದ) ಹೊರತು ಇತರ ಎಲ್ಲಾ ವಸ್ತುಗಳೂ ನಾಶವಾಗುತ್ತವೆ. ಆಜ್ಞಾಧಿಕಾರವು ಅವನದ್ದು. ನಿಮ್ಮನ್ನು ಅವನ ಬಳಿಗೇ ಮರಳಿಸಲಾಗುವುದು.

وَلَا تَدْعُ مَعَ ٱللَّهِ إِلَٰهًا ءَاخَرَ ۘ لَآ إِلَٰهَ إِلَّا هُوَ ۚ كُلُّ شَىْءٍ هَالِكٌ إِلَّا وَجْهَهُۥ ۚ لَهُ ٱلْحُكْمُ وَإِلَيْهِ تُرْجَعُونَ ﴿٨٨﴾

# 29. ಅಲ್-ಅನ್ಕಬೂತ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسْمِ ٱللَّهِ ٱلرَّحْمَٰنِ ٱلرَّحِيمِ

1. ಅಲಿಫ್-ಲಾಮ್-ಮೀಮ್.

الٓمٓ ﴿١﴾

2. “ನಾವು ವಿಶ್ವಾಸವಿಟ್ಟಿದ್ದೇವೆ” ಎಂದು ಹೇಳುವ ಕಾರಣ ತಮ್ಮನ್ನು ಪರೀಕ್ಷೆಗೆ ಗುರಿಯಾಗಿಸದೆ ಬಿಟ್ಟು ಬಿಡಲಾಗುವುದೆಂದು ಜನರು ಭಾವಿಸಿದ್ದಾರೆಯೇ?

أَحَسِبَ ٱلنَّاسُ أَن يُتْرَكُوٓا۟ أَن يَقُولُوٓا۟ ءَامَنَّا وَهُمْ لَا يُفْتَنُونَ ﴿٢﴾

3. ಅವರಿಗಿಂತ ಮೊದಲಿನವರನ್ನೂ ನಾವು ಪರೀಕ್ಷಿಸಿದ್ದೇವೆ. ಆಗ ಅವರಲ್ಲಿ ಸತ್ಯವಂತರು ಯಾರೆಂದು ಅಲ್ಲಾಹು ಖಂಡಿತ ತಿಳಿಯುವನು ಮತ್ತು ಸುಳ್ಳು ಹೇಳುವವರು ಯಾರೆಂದೂ ಅವನು ಖಂಡಿತ ತಿಳಿಯುವನು.

وَلَقَدْ فَتَنَّا ٱلَّذِينَ مِن قَبْلِهِمْ ۖ فَلَيَعْلَمَنَّ ٱللَّهُ ٱلَّذِينَ صَدَقُوا۟ وَلَيَعْلَمَنَّ ٱلْكَٰذِبِينَ ﴿٣﴾

4. ದುಷ್ಕರ್ಮವೆಸಗುವವರು ನಮ್ಮ ನಿಯಂತ್ರಣದಲ್ಲಿಲ್ಲವೆಂದು ಅವರು ಭಾವಿಸುತ್ತಿದ್ದಾರೆಯೇ? ಅವರು ನೀಡುವ ತೀರ್ಪು ಬಹಳ ನಿಕೃಷ್ಟವಾಗಿದೆ.

أَمۡ حَسِبَ ٱلَّذِينَ يَعۡمَلُونَ ٱلسَّيِّـَٔاتِ أَن يَسۡبِقُونَاۚ سَآءَ مَا يَحۡكُمُونَ ٤

5. ಯಾರಿಗೆ ಅಲ್ಲಾಹನನ್ನು ಭೇಟಿಯಾಗುವ ನಿರೀಕ್ಷೆಯಿದೆಯೋ— ನಿಶ್ಚಯವಾಗಿಯೂ ಅಲ್ಲಾಹನ ನಿಶ್ಚಿತ ಅವಧಿಯು ಬಂದೇ ಬರುತ್ತದೆ. ಅವನು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

مَن كَانَ يَرۡجُواْ لِقَآءَ ٱللَّهِ فَإِنَّ أَجَلَ ٱللَّهِ لَأٓتٖۚ وَهُوَ ٱلسَّمِيعُ ٱلۡعَلِيمُ ٥

6. ಯಾರು ಪರಿಶ್ರಮಪಡುತ್ತಾನೋ ಅವನು ಪರಿಶ್ರಮಪಡುವುದು ಅವನ ಒಳಿತಿಗೇ ಆಗಿದೆ. ನಿಶ್ಚಯವಾಗಿಯೂ ಅಲ್ಲಾಹು ಸರ್ವ-ಲೋಕದವರಿಂದ ನಿರಪೇಕ್ಷನಾಗಿದ್ದಾನೆ.

وَمَن جَٰهَدَ فَإِنَّمَا يُجَٰهِدُ لِنَفۡسِهِۦٓۚ إِنَّ ٱللَّهَ لَغَنِيٌّ عَنِ ٱلۡعَٰلَمِينَ ٦

7. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ ಅವರ ಕೆಡುಕುಗಳನ್ನು ನಾವು ಅಳಿಸಿ ಬಿಡುವೆವು ಮತ್ತು ಅವರು ಮಾಡುತ್ತಿದ್ದ ಅತ್ಯುತ್ತಮ ಕರ್ಮಗಳಿಗೆ ಅತ್ಯುತ್ತಮ ಪ್ರತಿಫಲವನ್ನು ನೀಡುವೆವು.

وَٱلَّذِينَ ءَامَنُواْ وَعَمِلُواْ ٱلصَّٰلِحَٰتِ لَنُكَفِّرَنَّ عَنۡهُمۡ سَيِّـَٔاتِهِمۡ وَلَنَجۡزِيَنَّهُمۡ أَحۡسَنَ ٱلَّذِي كَانُواْ يَعۡمَلُونَ ٧

8. ತಂದೆ-ತಾಯಿಗಳಿಗೆ ಒಳಿತು ಮಾಡಬೇಕೆಂದು ನಾವು ಮನುಷ್ಯನಿಗೆ ಉಪದೇಶ ಮಾಡಿದ್ದೇವೆ. ಆದರೆ, ನಿನಗೆ ಯಾವುದೇ ತಿಳುವಳಿಕೆಯಿಲ್ಲದ ವಸ್ತುವನ್ನು ನನ್ನೊಂದಿಗೆ ಸಹಭಾಗಿಯನ್ನಾಗಿ (ಶಿರ್ಕ್) ಮಾಡಲು ಅವರು (ತಂದೆ-ತಾಯಿ) ಪರಿಶ್ರಮಿಸಿದರೆ ಅವರ ಆಜ್ಞಾಪಾಲನೆ ಮಾಡಬೇಡ. ನೀವು ಮರಳಿ ಬರುವುದು ನನ್ನ ಬಳಿಗೇ ಆಗಿದೆ. ಆಗ ನೀವು ಮಾಡುತ್ತಿದ್ದ ಕರ್ಮಗಳ ಬಗ್ಗೆ ನಾನು ನಿಮಗೆ ತಿಳಿಸಿಕೊಡುವೆನು.

وَوَصَّيۡنَا ٱلۡإِنسَٰنَ بِوَٰلِدَيۡهِ حُسۡنٗاۖ وَإِن جَٰهَدَاكَ لِتُشۡرِكَ بِي مَا لَيۡسَ لَكَ بِهِۦ عِلۡمٞ فَلَا تُطِعۡهُمَآۚ إِلَيَّ مَرۡجِعُكُمۡ فَأُنَبِّئُكُم بِمَا كُنتُمۡ تَعۡمَلُونَ ٨

9. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ— ನಿಶ್ಚಯವಾಗಿಯೂ ನಾವು ಅವರನ್ನು ನೀತಿವಂತರಲ್ಲಿ ಸೇರಿಸುವೆವು.

وَٱلَّذِينَ ءَامَنُواْ وَعَمِلُواْ ٱلصَّٰلِحَٰتِ لَنُدۡخِلَنَّهُمۡ فِي ٱلصَّٰلِحِينَ ٩

10. ಜನರಲ್ಲಿ ಕೆಲವರಿದ್ದಾರೆ. ಅವರು ಹೇಳುತ್ತಾರೆ: "ನಾವು ಅಲ್ಲಾಹನಲ್ಲಿ ವಿಶ್ವಾಸವಿಟ್ಟಿದ್ದೇವೆ." ಆದರೆ ಅಲ್ಲಾಹನ ಮಾರ್ಗದಲ್ಲಿ ಅವರಿಗೆ ತೊಂದರೆಗಳು ಎದುರಾದರೆ, ಜನರು ನೀಡುವ ತೊಂದರೆಯನ್ನು ಅವರು ಅಲ್ಲಾಹನ ಶಿಕ್ಷೆಯಂತೆಯೇ ಪರಿಗಣಿಸುತ್ತಾರೆ. ಒಂದು ವೇಳೆ, ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯಿಂದ ಏನಾದರೂ ಸಹಾಯವು ಬಂದರೆ ಅವರು ಹೇಳುತ್ತಾರೆ: "ನಿಜವಾಗಿಯೂ ನಾವು ನಿಮ್ಮ ಜೊತೆಗಿದ್ದೆವು." ಸರ್ವಲೋಕದವರ ಹೃದಯಗಳಲ್ಲಿ ಏನಿದೆಯೆಂದು ಅಲ್ಲಾಹನಿಗೆ ಚೆನ್ನಾಗಿ ತಿಳಿದಿಲ್ಲವೇ?

وَمِنَ ٱلنَّاسِ مَن يَقُولُ ءَامَنَّا بِٱللَّهِ فَإِذَآ أُوذِيَ فِي ٱللَّهِ جَعَلَ فِتۡنَةَ ٱلنَّاسِ كَعَذَابِ ٱللَّهِۖ وَلَئِن جَآءَ نَصۡرٞ مِّن رَّبِّكَ لَيَقُولُنَّ إِنَّا كُنَّا مَعَكُمۡۚ أَوَلَيۡسَ ٱللَّهُ بِأَعۡلَمَ بِمَا فِي صُدُورِ ٱلۡعَٰلَمِينَ ١٠

| | | |
|---|---|---|
| 11. | ಸತ್ಯವಿಶ್ವಾಸಿಗಳು ಯಾರೆಂದು ನಿಶ್ಚಯವಾಗಿಯೂ ಅಲ್ಲಾಹು ತಿಳಿಯುತ್ತಾನೆ. ಕಪಟವಿಶ್ವಾಸಿಗಳು ಯಾರೆಂದೂ ಅವನು ತಿಳಿಯುತ್ತಾನೆ. | وَلَيَعۡلَمَنَّ ٱللَّهُ ٱلَّذِينَ ءَامَنُواْ وَلَيَعۡلَمَنَّ ٱلۡمُنَٰفِقِينَ ﴿١١﴾ |
| 12. | ಸತ್ಯನಿಷೇಧಿಗಳು ಸತ್ಯವಿಶ್ವಾಸಿಗಳೊಡನೆ ಹೇಳಿದರು: "ನಮ್ಮ ಮಾರ್ಗವನ್ನು ಅನುಸರಿಸಿರಿ. ನಿಮ್ಮ ಪಾಪಗಳನ್ನು ನಾವು ಹೊರುತ್ತೇವೆ." ಆದರೆ ಅವರು ಇವರ ಪಾಪಗಳಲ್ಲಿ ಏನನ್ನೂ ಹೊರುವುದಿಲ್ಲ. ಅವರು ಸುಳ್ಳು ಹೇಳುವವರೇ ಆಗಿದ್ದಾರೆ. | وَقَالَ ٱلَّذِينَ كَفَرُواْ لِلَّذِينَ ءَامَنُواْ ٱتَّبِعُواْ سَبِيلَنَا وَلۡنَحۡمِلۡ خَطَٰيَٰكُمۡ وَمَا هُم بِحَٰمِلِينَ مِنۡ خَطَٰيَٰهُم مِّن شَيۡءٍۖ إِنَّهُمۡ لَكَٰذِبُونَ ﴿١٢﴾ |
| 13. | ಅವರು ಅವರದ್ದೇ ಪಾಪಭಾರಗಳನ್ನು ಹೊರುತ್ತಾರೆ. ಅವರ ಪಾಪಭಾರಗಳೊಂದಿಗೆ ಇತರರು ಮಾಡಿದ ಪಾಪಭಾರಗಳನ್ನೂ ಹೊರುತ್ತಾರೆ. ಅವರು ಆರೋಪಿಸುವ ಸುಳ್ಳುಗಳ ಬಗ್ಗೆ ಪುನರುತ್ಥಾನ ದಿನದಂದು ಅವರಲ್ಲಿ ಖಂಡಿತ ವಿಚಾರಿಸಲಾಗುವುದು. | وَلَيَحۡمِلُنَّ أَثۡقَالَهُمۡ وَأَثۡقَالٗا مَّعَ أَثۡقَالِهِمۡۖ وَلَيُسۡـَٔلُنَّ يَوۡمَ ٱلۡقِيَٰمَةِ عَمَّا كَانُواْ يَفۡتَرُونَ ﴿١٣﴾ |
| 14. | ನಾವು ನೂಹರನ್ನು ಅವರ ಜನರ ಬಳಿಗೆ ಕಳುಹಿಸಿದೆವು. ಅವರು ಒಂಬೈನೂರ ಐವತ್ತು ವರ್ಷಗಳ ಕಾಲ ಅವರ ನಡುವೆ ಬದುಕಿದರು. ನಂತರ ಅವರು ಅಕ್ರಮವೆಸಗಿದಾಗ ಚಂಡಮಾರುತವು ಅವರನ್ನು ಹಿಡಿದು ನಾಶ ಮಾಡಿತು. | وَلَقَدۡ أَرۡسَلۡنَا نُوحًا إِلَىٰ قَوۡمِهِۦ فَلَبِثَ فِيهِمۡ أَلۡفَ سَنَةٍ إِلَّا خَمۡسِينَ عَامٗا فَأَخَذَهُمُ ٱلطُّوفَانُ وَهُمۡ ظَٰلِمُونَ ﴿١٤﴾ |
| 15. | ಆದರೆ ನಾವು ನೂಹರನ್ನು ಮತ್ತು ನಾವೆಯಲ್ಲಿದ್ದವ-ರನ್ನು ರಕ್ಷಿಸಿದೆವು. ಅದನ್ನು ಸರ್ವಲೋಕದವರಿಗೆ ಒಂದು ದೃಷ್ಟಾಂತವನ್ನಾಗಿ ಮಾಡಿದೆವು. | فَأَنجَيۡنَٰهُ وَأَصۡحَٰبَ ٱلسَّفِينَةِ وَجَعَلۡنَٰهَآ ءَايَةٗ لِّلۡعَٰلَمِينَ ﴿١٥﴾ |
| 16. | ಇಬ್ರಾಹೀಮರನ್ನು ನೆನಪಿಸಿಕೊಳ್ಳಿ, ಅವರು ತಮ್ಮ ಜನರೊಂದಿಗೆ ಹೇಳಿದ ಸಂದರ್ಭ: "ನೀವು ಅಲ್ಲಾಹನನ್ನು ಆರಾಧಿಸಿರಿ ಮತ್ತು ಅವನನ್ನು ಮಾತ್ರ ಭಯಪಡಿರಿ. ನಿಮಗೆ ತಿಳುವಳಿಕೆಯಿದ್ದರೆ ಅದೇ ನಿಮಗೆ ಉತ್ತಮವಾಗಿದೆ. | وَإِبۡرَٰهِيمَ إِذۡ قَالَ لِقَوۡمِهِ ٱعۡبُدُواْ ٱللَّهَ وَٱتَّقُوهُۖ ذَٰلِكُمۡ خَيۡرٞ لَّكُمۡ إِن كُنتُمۡ تَعۡلَمُونَ ﴿١٦﴾ |
| 17. | ನೀವು ಅಲ್ಲಾಹನನ್ನು ಬಿಟ್ಟು ಕೆಲವು ವಿಗ್ರಹಗಳನ್ನು ಆರಾಧಿಸು-ತ್ತಿದ್ದೀರಿ ಮತ್ತು ಸುಳ್ಳನ್ನು ಸೃಷ್ಟಿಸುತ್ತಿದ್ದೀರಿ. ನೀವು ಅಲ್ಲಾಹನನ್ನು ಬಿಟ್ಟು ಯಾರನ್ನು ಆರಾಧಿಸುತ್ತಿದ್ದೀರೋ ಅವರು ನಿಮ್ಮ ಉಪಜೀವನವನ್ನು ವಶದಲ್ಲಿಟ್ಟುಕೊಂಡಿಲ್ಲ. ಆದ್ದರಿಂದ ನೀವು ಅಲ್ಲಾಹನಲ್ಲಿ ಉಪಜೀವನವನ್ನು ಬೇಡಿರಿ. ಅವನನ್ನು ಮಾತ್ರ ಆರಾಧಿಸಿರಿ ಮತ್ತು ಅವನಿಗೆ ಕೃತಜ್ಞರಾಗಿರಿ. ನಿಮ್ಮನ್ನು ಅವನ ಬಳಿಗೇ ಮರಳಿಸಲಾಗುವುದು." | إِنَّمَا تَعۡبُدُونَ مِن دُونِ ٱللَّهِ أَوۡثَٰنٗا وَتَخۡلُقُونَ إِفۡكًاۚ إِنَّ ٱلَّذِينَ تَعۡبُدُونَ مِن دُونِ ٱللَّهِ لَا يَمۡلِكُونَ لَكُمۡ رِزۡقٗا فَٱبۡتَغُواْ عِندَ ٱللَّهِ ٱلرِّزۡقَ وَٱعۡبُدُوهُ وَٱشۡكُرُواْ لَهُۥٓۖ إِلَيۡهِ تُرۡجَعُونَ ﴿١٧﴾ |
| 18. | ನೀವು ನಿಷೇಧಿಸುವುದಾದರೆ (ಅದರಲ್ಲಿ ಆಶ್ಚರ್ಯವಿಲ್ಲ). ನಿಮಗಿಂತ ಮೊದಲು ಹಲವಾರು ಸಮುದಾಯಗಳ ಜನರು | وَإِن تُكَذِّبُواْ فَقَدۡ كَذَّبَ أُمَمٞ مِّن قَبۡلِكُمۡۖ |

ನಿಷೇಧಿಸಿದ್ದಾರೆ. ಸಂದೇಶವಾಹಕರ ಕರ್ತವ್ಯವು ಸ್ಪಷ್ಟವಾದ ರೀತಿಯಲ್ಲಿ ಸಂದೇಶವನ್ನು ತಲುಪಿಸುವುದು ಮಾತ್ರವಾಗಿದೆ.

وَمَا عَلَى ٱلرَّسُولِ إِلَّا ٱلْبَلَٰغُ ٱلْمُبِينُ ﴿١٨﴾

19. ಅಲ್ಲಾಹು ಪ್ರಥಮ ಬಾರಿಗೆ ಹೇಗೆ ಸೃಷ್ಟಿಸಿದನೆಂದು ಅವರು ನೋಡಿಲ್ಲವೇ? ನಂತರ ಅವನು ಅದನ್ನು ಪುನರಾವರ್ತಿ-ಸುವನು. ನಿಶ್ಚಯವಾಗಿಯೂ ಅದು ಅಲ್ಲಾಹನ ಮಟ್ಟಿಗೆ ಬಹಳ ಸುಲಭವಾಗಿದೆ.

أَوَلَمْ يَرَوْا۟ كَيْفَ يُبْدِئُ ٱللَّهُ ٱلْخَلْقَ ثُمَّ يُعِيدُهُۥٓ ۚ إِنَّ ذَٰلِكَ عَلَى ٱللَّهِ يَسِيرٌ ﴿١٩﴾

20. ಹೇಳಿರಿ: “ನೀವು ಭೂಮಿಯಲ್ಲಿ ಸಂಚರಿಸಿರಿ. ನಂತರ ಅವನು ಪ್ರಥಮ ಬಾರಿಗೆ ಹೇಗೆ ಸೃಷ್ಟಿಸಿದನೆಂದು ನೋಡಿರಿ. ನಂತರ ಅಲ್ಲಾಹು ಇನ್ನೊಮ್ಮೆ ಸೃಷ್ಟಿಸುವನು. ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.”

قُلْ سِيرُوا۟ فِى ٱلْأَرْضِ فَٱنظُرُوا۟ كَيْفَ بَدَأَ ٱلْخَلْقَ ۚ ثُمَّ ٱللَّهُ يُنشِئُ ٱلنَّشْأَةَ ٱلْءَاخِرَةَ ۚ إِنَّ ٱللَّهَ عَلَىٰ كُلِّ شَىْءٍ قَدِيرٌ ﴿٢٠﴾

21. ಅವನು ಇಚ್ಛಿಸುವವರನ್ನು ಅವನು ಶಿಕ್ಷಿಸುತ್ತಾನೆ ಮತ್ತು ಅವನು ಇಚ್ಛಿಸುವವರಿಗೆ ಕರುಣೆ ತೋರುತ್ತಾನೆ. ನಿಮ್ಮನ್ನು ಅವನ ಬಳಿಗೇ ಮರಳಿಸಲಾಗುವುದು.

يُعَذِّبُ مَن يَشَآءُ وَيَرْحَمُ مَن يَشَآءُ ۖ وَإِلَيْهِ تُقْلَبُونَ ﴿٢١﴾

22. ಭೂಮಿಯಲ್ಲಿ ಅಥವಾ ಆಕಾಶದಲ್ಲಿ ಅಲ್ಲಾಹನನ್ನು ಸೋಲಿಸಲು ನಿಮಗೆ ಸಾಧ್ಯವಿಲ್ಲ. ಅಲ್ಲಾಹನ ಹೊರತು ನಿಮಗೆ ಬೇರೆ ರಕ್ಷಕರೋ ಸಹಾಯಕರೋ ಇಲ್ಲ.

وَمَآ أَنتُم بِمُعْجِزِينَ فِى ٱلْأَرْضِ وَلَا فِى ٱلسَّمَآءِ ۖ وَمَا لَكُم مِّن دُونِ ٱللَّهِ مِن وَلِىٍّ وَلَا نَصِيرٍ ﴿٢٢﴾

23. ಅಲ್ಲಾಹನ ವಚನಗಳನ್ನು ಮತ್ತು ಅವನನ್ನು ಭೇಟಿಯಾಗುವುದನ್ನು ನಿಷೇಧಿಸಿದವರು ಯಾರೋ ಅವರು ನನ್ನ ದಯೆಯ ಬಗ್ಗೆ ನಿರಾಶರಾಗಿದ್ದಾರೆ. ಅವರಿಗೆ ಯಾತನಾಮಯ ಶಿಕ್ಷೆಯಿದೆ.

وَٱلَّذِينَ كَفَرُوا۟ بِـَٔايَٰتِ ٱللَّهِ وَلِقَآئِهِۦٓ أُو۟لَٰٓئِكَ يَئِسُوا۟ مِن رَّحْمَتِى وَأُو۟لَٰٓئِكَ لَهُمْ عَذَابٌ أَلِيمٌ ﴿٢٣﴾

24. ಆಗ ಅವರ (ಇಬ್ರಾಹೀಮರ) ಜನರ ಉತ್ತರವು ಇದು ಮಾತ್ರವಾಗಿತ್ತು: “ನೀವು ಅವನನ್ನು ಕೊಲ್ಲಿರಿ ಅಥವಾ ಸುಟ್ಟು ಬಿಡಿ.” ಆಗ ಅಲ್ಲಾಹು ಅವರನ್ನು ಬೆಂಕಿಯಿಂದ ರಕ್ಷಿಸಿದನು. ವಿಶ್ವಾಸವಿಡುವ ಜನರಿಗೆ ನಿಶ್ಚಯವಾಗಿಯೂ ಅದರಲ್ಲಿ ದೃಷ್ಟಾಂತಗಳಿವೆ.

فَمَا كَانَ جَوَابَ قَوْمِهِۦٓ إِلَّآ أَن قَالُوا۟ ٱقْتُلُوهُ أَوْ حَرِّقُوهُ فَأَنجَىٰهُ ٱللَّهُ مِنَ ٱلنَّارِ ۚ إِنَّ فِى ذَٰلِكَ لَءَايَٰتٍ لِّقَوْمٍ يُؤْمِنُونَ ﴿٢٤﴾

25. ಇಬ್ರಾಹೀಮ್ ಹೇಳಿದರು: “ನೀವು ಅಲ್ಲಾಹನನ್ನು ಬಿಟ್ಟು ವಿಗ್ರಹಗಳನ್ನು (ದೇವರುಗಳಾಗಿ) ಸ್ವೀಕರಿಸಿರುವುದು ಇಹಲೋಕ ಜೀವನದಲ್ಲಿ ನೀವು ಪರಸ್ಪರ ಹೊಂದಿರುವ ಗೆಳೆತನದ ಆಧಾರದಲ್ಲಿ ಮಾತ್ರವಾಗಿದೆ. ಆದರೆ ಪುನರುತ್ಥಾನದ ದಿನದಂದು ನೀವು ಒಬ್ಬರನ್ನೊಬ್ಬರು ನಿಷೇಧಿಸುವಿರಿ ಮತ್ತು ಒಬ್ಬರನ್ನೊ-ಬ್ಬರು ಶಪಿಸುವಿರಿ. ನಿಮ್ಮ ವಾಸಸ್ಥಳವು ನರಕವಾಗಿದೆ. ನಿಮಗೆ ಯಾವುದೇ ಸಹಾಯಕರು ಇರುವುದಿಲ್ಲ.”

وَقَالَ إِنَّمَا ٱتَّخَذْتُم مِّن دُونِ ٱللَّهِ أَوْثَٰنًا مَّوَدَّةَ بَيْنِكُمْ فِى ٱلْحَيَوٰةِ ٱلدُّنْيَا ۖ ثُمَّ يَوْمَ ٱلْقِيَٰمَةِ يَكْفُرُ بَعْضُكُم بِبَعْضٍ وَيَلْعَنُ بَعْضُكُم بَعْضًا وَمَأْوَىٰكُمُ ٱلنَّارُ وَمَا لَكُم مِّن نَّٰصِرِينَ ﴿٢٥﴾

| | |
|---|---|
| 26. ಆಗ ಲೂತ್ ಅವರಲ್ಲಿ ವಿಶ್ವಾಸವಿಟ್ಟರು. ಇಬ್ರಾಹೀಮ್ ಹೇಳಿದರು: "ನಿಶ್ಚಯವಾಗಿಯೂ ನಾನು ನನ್ನ ಪರಿಪಾಲಕನ (ಅಲ್ಲಾಹನ) ಕಡೆಗೆ ವಲಸೆ (ಹಿಜ್ರ) ಮಾಡುತ್ತೇನೆ. ಅವನು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ."[1] | فَـَٔامَنَ لَهُۥ لُوطٌۘ وَقَالَ إِنِّي مُهَاجِرٌ إِلَىٰ رَبِّيٓۖ إِنَّهُۥ هُوَ ٱلۡعَزِيزُ ٱلۡحَكِيمُ ﴿٢٦﴾ |
| 27. ನಾವು ಅವರಿಗೆ ಇಸ್‌ಹಾಕ್ ಮತ್ತು ಯಾಕೂಬರನ್ನು ದಯಪಾಲಿಸಿದೆವು. ಅವರ ಸಂತಾನದಲ್ಲೇ ಪ್ರವಾದಿತ್ವ ಮತ್ತು ಗ್ರಂಥವನ್ನು ನಿಶ್ಚಯಿಸಿದೆವು. ಇಹಲೋಕದಲ್ಲೂ ನಾವು ಅವರಿಗೆ ಪ್ರತಿಫಲವನ್ನು ನೀಡಿದೆವು. ಪರಲೋಕದಲ್ಲಿ ನಿಶ್ಚಯವಾಗಿಯೂ ಅವರು ನೀತಿವಂತರಲ್ಲಿ ಸೇರುವರು. | وَوَهَبۡنَا لَهُۥٓ إِسۡحَٰقَ وَيَعۡقُوبَ وَجَعَلۡنَا فِي ذُرِّيَّتِهِ ٱلنُّبُوَّةَ وَٱلۡكِتَٰبَ وَءَاتَيۡنَٰهُ أَجۡرَهُۥ فِي ٱلدُّنۡيَاۖ وَإِنَّهُۥ فِي ٱلۡأٓخِرَةِ لَمِنَ ٱلصَّٰلِحِينَ ﴿٢٧﴾ |
| 28. ಲೂತ್‌ರನ್ನೂ ನೆನಪಿಸಿಕೊಳ್ಳಿ, ಅವರು ತಮ್ಮ ಜನರೊಡನೆ ಹೇಳಿದ ಸಂದರ್ಭ: "ಸರ್ವಲೋಕಗಳ ಜನರಲ್ಲಿ ಈ ತನಕ ಯಾರೂ ಮಾಡದ ನೀಚಕೃತ್ಯವನ್ನು ನೀವು ಮಾಡುತ್ತಿದ್ದೀರಿ. | وَلُوطًا إِذۡ قَالَ لِقَوۡمِهِۦٓ إِنَّكُمۡ لَتَأۡتُونَ ٱلۡفَٰحِشَةَ مَا سَبَقَكُم بِهَا مِنۡ أَحَدٖ مِّنَ ٱلۡعَٰلَمِينَ ﴿٢٨﴾ |
| 29. ನೀವು (ಲೈಂಗಿಕ ತೃಷೆಯನ್ನು ತೀರಿಸಲು) ಪುರುಷರ ಬಳಿಗೆ ಹೋಗುತ್ತೀರಿ, ರಸ್ತೆಗಳಲ್ಲಿ ತಡೆಯೊಡ್ಡುತ್ತೀರಿ ಮತ್ತು ನಿಮ್ಮ ಸಭೆಗಳಲ್ಲೂ ಅಶ್ಲೀಲ ಕೃತ್ಯಗಳನ್ನು ಮಾಡುತ್ತೀರಿ." ಆಗ ಅವರ ಜನರ ಉತ್ತರವು ಇದು ಮಾತ್ರವಾಗಿತ್ತು: "ನೀನು ಸತ್ಯವಂತನಾಗಿ-ದ್ದರೆ ಅಲ್ಲಾಹನ ಶಿಕ್ಷೆಯನ್ನು ತಂದು ತೋರಿಸು." | أَئِنَّكُمۡ لَتَأۡتُونَ ٱلرِّجَالَ وَتَقۡطَعُونَ ٱلسَّبِيلَ وَتَأۡتُونَ فِي نَادِيكُمُ ٱلۡمُنكَرَۖ فَمَا كَانَ جَوَابَ قَوۡمِهِۦٓ إِلَّآ أَن قَالُواْ ٱئۡتِنَا بِعَذَابِ ٱللَّهِ إِن كُنتَ مِنَ ٱلصَّٰدِقِينَ ﴿٢٩﴾ |
| 30. ಲೂತ್ ಪ್ರಾರ್ಥಿಸಿದರು: "ಓ ನನ್ನ ಪರಿಪಾಲಕನೇ! ಕಿಡಿಗೇಡಿಗಳಾದ ಈ ಜನರ ವಿರುದ್ಧ ನನಗೆ ಸಹಾಯ ಮಾಡು." | قَالَ رَبِّ ٱنصُرۡنِي عَلَى ٱلۡقَوۡمِ ٱلۡمُفۡسِدِينَ ﴿٣٠﴾ |
| 31. ನಮ್ಮ ದೂತರು ಸುವಾರ್ತೆಯೊಂದಿಗೆ ಇಬ್ರಾಹೀಮರ ಬಳಿಗೆ ಬಂದ ಸಂದರ್ಭ. ಅವರು (ದೂತರು) ಹೇಳಿದರು: "ನಾವು ಈ ಊರಿನ ಜನರನ್ನು ಖಂಡಿತ ನಾಶ ಮಾಡುತ್ತೇವೆ. ಅದರ ನಿವಾಸಿಗಳು ಮಹಾ ದುಷ್ಟರಾಗಿದ್ದಾರೆ." | وَلَمَّا جَآءَتۡ رُسُلُنَآ إِبۡرَٰهِيمَ بِٱلۡبُشۡرَىٰ قَالُوٓاْ إِنَّا مُهۡلِكُوٓاْ أَهۡلِ هَٰذِهِ ٱلۡقَرۡيَةِۖ إِنَّ أَهۡلَهَا كَانُواْ ظَٰلِمِينَ ﴿٣١﴾ |
| 32. ಇಬ್ರಾಹೀಮ್ ಹೇಳಿದರು: "ಆದರೆ ಅಲ್ಲಿ ಲೂತ್ ಇದ್ದಾರೆ!" ದೂತರು ಉತ್ತರಿಸಿದರು: "ಅಲ್ಲಿ ಯಾರೆಲ್ಲಾ ಇದ್ದಾರೆಂದು ನಮಗೆ ಚೆನ್ನಾಗಿ ತಿಳಿದಿದೆ. ನಾವು ಅವರನ್ನು ಮತ್ತು ಅವರ ಕುಟುಂಬವನ್ನು ರಕ್ಷಿಸುವೆವು. ಅವರ ಪತ್ನಿಯ ಹೊರತು. ಆಕೆ ಹಿಂದೆ ಉಳಿದವರಲ್ಲಿ ಸೇರುವಳು." | قَالَ إِنَّ فِيهَا لُوطٗاۚ قَالُواْ نَحۡنُ أَعۡلَمُ بِمَن فِيهَاۖ لَنُنَجِّيَنَّهُۥ وَأَهۡلَهُۥٓ إِلَّا ٱمۡرَأَتَهُۥ كَانَتۡ مِنَ ٱلۡغَٰبِرِينَ ﴿٣٢﴾ |
| 33. ನಮ್ಮ ದೂತರು ಲೂತರ ಬಳಿಗೆ ಬಂದ ಸಂದರ್ಭ. ಅವರನ್ನು ನೋಡಿ ಲೂತರಿಗೆ ಬಹಳ ಸಂಕಟವಾಯಿತು ಮತ್ತು ಇಕ್ಕಟ್ಟು | وَلَمَّآ أَن جَآءَتۡ رُسُلُنَا لُوطٗا سِيٓءَ بِهِمۡ وَضَاقَ بِهِمۡ ذَرۡعٗاۖ وَقَالُواْ لَا تَخَفۡ وَلَا تَحۡزَنۡ |

[1] ಲೂತ್ (ಅವರ ಮೇಲೆ ಶಾಂತಿಯಿರಲಿ) ಪ್ರವಾದಿ ಇಬ್ರಾಹೀಂ (ಅವರ ಮೇಲೆ ಶಾಂತಿಯಿರಲಿ) ರವರ ಸಹೋದರನ ಮಗ. ಇವರು ಇರಾಕಿನಲ್ಲಿ ವಾಸವಾಗಿದ್ದರು. ನಂತರ ಅವರು ಪ್ಯಾಲಸ್ತೀನ್‌ಗೆ ವಲಸೆ ಮಾಡಿದರು. ಲೂತ್ ಸದೂಮ್ ನಲ್ಲಿ ನೆಲೆಸಿದರು.

ಅನುಭವವಾಯಿತು. ಅವರು ಹೇಳಿದರು: “ಭಯಪಡಬೇಡಿ; ಸಂಕಟಪಡಬೇಡಿ. ನಾವು ನಿಮ್ಮನ್ನು ಮತ್ತು ನಿಮ್ಮ ಕುಟುಂಬವನ್ನು ಖಂಡಿತ ರಕ್ಷಿಸುವೆವು. ನಿಮ್ಮ ಪತ್ನಿಯ ಹೊರತು. ಆಕೆ ಹಿಂದೆ ಉಳಿದವರಲ್ಲಿ ಸೇರುವಳು.

إِنَّا مُنَجُّوكَ وَأَهۡلَكَ إِلَّا ٱمۡرَأَتَكَ كَانَتۡ مِنَ
ٱلۡغَٰبِرِينَ ٣٣

---

34. ನಾವು ಈ ಊರಿನವರ ಮೇಲೆ ಆಕಾಶದಿಂದ ಶಿಕ್ಷೆಯನ್ನು ಇಳಿಸುವೆವು. ಅವರು ಮಾಡಿದ ದುಷ್ಕೃತ್ಯಗಳ ಕಾರಣದಿಂದ.”

إِنَّا مُنزِلُونَ عَلَىٰٓ أَهۡلِ هَٰذِهِ ٱلۡقَرۡيَةِ رِجۡزٗا مِّنَ
ٱلسَّمَآءِ بِمَا كَانُواْ يَفۡسُقُونَ ٣٤

---

35. ನಾವು ಆ ಊರನ್ನು ಒಂದು ಸ್ಪಷ್ಟ ಚಿಹ್ನೆಯಾಗಿ ಬಾಕಿಯುಳಿಸಿದ್ದೇವೆ. ಬುದ್ಧಿಶಕ್ತಿಯಿರುವ ಜನರು ಆಲೋಚಿಸುವುದಕ್ಕಾಗಿ.

وَلَقَد تَّرَكۡنَا مِنۡهَآ ءَايَةَۢ بَيِّنَةٗ لِّقَوۡمٖ يَعۡقِلُونَ ٣٥

---

36. ನಾವು ಮದ್ಯನರ ಬಳಿಗೆ ಅವರ ಸಹೋದರ ಶುಐಬರನ್ನು ಕಳುಹಿಸಿದೆವು. ಅವರು ಹೇಳಿದರು: “ನನ್ನ ಜನರೇ! ನೀವು ಅಲ್ಲಾಹನನ್ನು ಮಾತ್ರ ಆರಾಧಿಸಿರಿ ಮತ್ತು ಅಂತ್ಯದಿನವನ್ನು ನಿರೀಕ್ಷಿಸಿರಿ. ನೀವು ಕಿಡಿಗೇಡಿತನ ಮಾಡುತ್ತಾ ಭೂಮಿಯಲ್ಲಿ ವಿಹರಿಸಬೇಡಿ.”

وَإِلَىٰ مَدۡيَنَ أَخَاهُمۡ شُعَيۡبٗا فَقَالَ يَٰقَوۡمِ ٱعۡبُدُواْ
ٱللَّهَ وَٱرۡجُواْ ٱلۡيَوۡمَ ٱلۡأٓخِرَ وَلَا تَعۡثَوۡاْ فِي ٱلۡأَرۡضِ
مُفۡسِدِينَ ٣٦

---

37. ಆದರೆ ಅವರು ಶುಐಬರನ್ನು ನಿಷೇಧಿಸಿದರು. ಆಗ ಭೂಕಂಪವು ಅವರನ್ನು ಹಿಡಿಯಿತು. ಅವರು ತಮ್ಮ ಮನೆಗಳಲ್ಲಿಯೇ ಬೋರಲು ಬಿದ್ದು ಸತ್ತರು.

فَكَذَّبُوهُ فَأَخَذَتۡهُمُ ٱلرَّجۡفَةُ فَأَصۡبَحُواْ فِي
دَارِهِمۡ جَٰثِمِينَ ٣٧

---

38. ನಾವು ಆದ್ ಮತ್ತು ಸಮೂದ್ ಗೋತ್ರಗಳನ್ನೂ ನಾಶ ಮಾಡಿದೆವು. ಅವರ ಕೆಲವು ವಾಸಸ್ಥಳಗಳು ನಿಮಗೆ ಸ್ಪಷ್ಟವಾಗಿ ಕಾಣುತ್ತಿವೆ. ಶೈತಾನನು ಅವರಿಗೆ ಅವರ ಕರ್ಮಗಳನ್ನು ಅಲಂಕರಿಸಿ ತೋರಿಸಿದನು ಮತ್ತು ಅವರನ್ನು ನೇರ ಮಾರ್ಗದಿಂದ ತಡೆದನು. (ವಾಸ್ತವವಾಗಿ) ಅವರು ನೋಡಿ ತಿಳಿಯುವ ಸಾಮರ್ಥ್ಯವುಳ್ಳವರಾಗಿದ್ದರು.

وَعَادٗا وَثَمُودَاْ وَقَد تَّبَيَّنَ لَكُم مِّن مَّسَٰكِنِهِمۡۖ
وَزَيَّنَ لَهُمُ ٱلشَّيۡطَٰنُ أَعۡمَٰلَهُمۡ فَصَدَّهُمۡ عَنِ
ٱلسَّبِيلِ وَكَانُواْ مُسۡتَبۡصِرِينَ ٣٨

---

39. ನಾವು ಕಾರೂನ್, ಫರೋಹ ಮತ್ತು ಹಾಮಾನನನ್ನು ಕೂಡ ನಾಶ ಮಾಡಿದೆವು. ಮೂಸಾ ಅವರ ಬಳಿಗೆ ಸ್ಪಷ್ಟವಾದ ಸಾಕ್ಷ್ಯಾಧಾರಗಳೊಂದಿಗೆ ಬಂದಿದ್ದರು. ಆಗ ಅವರು ಭೂಮಿಯಲ್ಲಿ ಅಹಂಕಾರದಿಂದ ಮೆರೆದರು. ಆದರೆ ಅವರಿಗೆ ನಮ್ಮನ್ನು ಮೀರಿ ಹೋಗಲು ಸಾಧ್ಯವಾಗಲಿಲ್ಲ.

وَقَٰرُونَ وَفِرۡعَوۡنَ وَهَٰمَٰنَۖ وَلَقَدۡ جَآءَهُم مُّوسَىٰ
بِٱلۡبَيِّنَٰتِ فَٱسۡتَكۡبَرُواْ فِي ٱلۡأَرۡضِ وَمَا كَانُواْ
سَٰبِقِينَ ٣٩

---

40. ಹೀಗೆ ನಾವು ಪ್ರತಿಯೊಬ್ಬರನ್ನೂ ಅವರು ಮಾಡಿದ ಪಾಪಗಳಿಗಾಗಿ ಹಿಡಿದು ಶಿಕ್ಷಿಸಿದೆವು. ಅವರಲ್ಲಿ ಕೆಲವರ ವಿರುದ್ಧ ನಾವು ಕಲ್ಲುಗಳ ಬಿರುಗಾಳಿಯನ್ನು ಕಳುಹಿಸಿದೆವು, ಅವರಲ್ಲಿ ಕೆಲವರನ್ನು

فَكُلًّا أَخَذۡنَا بِذَنۢبِهِۦۖ فَمِنۡهُم مَّنۡ أَرۡسَلۡنَا عَلَيۡهِ
حَاصِبٗا وَمِنۡهُم مَّنۡ أَخَذَتۡهُ ٱلصَّيۡحَةُ وَمِنۡهُم
مَّنۡ خَسَفۡنَا بِهِ ٱلۡأَرۡضَ وَمِنۡهُم مَّنۡ أَغۡرَقۡنَاۚ وَمَا

كَانَ ٱللَّهُ لِيَظۡلِمَهُمۡ وَلَٰكِن كَانُوٓاْ أَنفُسَهُمۡ يَظۡلِمُونَ ۝٤٠

ಚೀತ್ಕಾರವು ಹಿಡಿದು ಬಿಟ್ಟಿತು, ಅವರಲ್ಲಿ ಕೆಲವರನ್ನು ನಾವು ಭೂಮಿಯಲ್ಲಿ ಹುದುಗಿಸಿದೆವು ಮತ್ತು ಅವರಲ್ಲಿ ಕೆಲವರನ್ನು ನೀರಿನಲ್ಲಿ ಮುಳುಗಿಸಿ ಕೊಂದೆವು. ಅಲ್ಲಾಹು ಅವರಿಗೆ ಯಾವುದೇ ಅನ್ಯಾಯ ಮಾಡಿಲ್ಲ. ಆದರೆ ಸ್ವತಃ ಅವರೇ ಅವರೊಡನೆ ಅನ್ಯಾಯವೆಸಗಿದರು.

---

مَثَلُ ٱلَّذِينَ ٱتَّخَذُواْ مِن دُونِ ٱللَّهِ أَوۡلِيَآءَ كَمَثَلِ ٱلۡعَنكَبُوتِ ٱتَّخَذَتۡ بَيۡتٗاۖ وَإِنَّ أَوۡهَنَ ٱلۡبُيُوتِ لَبَيۡتُ ٱلۡعَنكَبُوتِۚ لَوۡ كَانُواْ يَعۡلَمُونَ ۝٤١

41. ಅಲ್ಲಾಹನನ್ನು ಬಿಟ್ಟು ಬೇರೆಯವರನ್ನು ರಕ್ಷಕರನ್ನಾಗಿ ಸ್ವೀಕರಿಸಿದವರ ಉದಾಹರಣೆಯು ಒಂದು ಜೇಡದಂತೆ. ಅದು ಒಂದು ಮನೆಯನ್ನು ಕಟ್ಟಿತು. ಮನೆಗಳಲ್ಲೇ ಅತ್ಯಂತ ದುರ್ಬಲ ಮನೆಯು ಜೇಡನ ಮನೆಯಾಗಿದೆ. ಅವರು ತಿಳಿಯುವವರಾಗಿದ್ದರೆ!

---

إِنَّ ٱللَّهَ يَعۡلَمُ مَا يَدۡعُونَ مِن دُونِهِۦ مِن شَيۡءٖۚ وَهُوَ ٱلۡعَزِيزُ ٱلۡحَكِيمُ ۝٤٢

42. ಅವರು ಅಲ್ಲಾಹನನ್ನು ಬಿಟ್ಟು ಕರೆದು ಪ್ರಾರ್ಥಿಸುವ ಎಲ್ಲಾ ವಸ್ತುಗಳ ಬಗ್ಗೆಯೂ ಅಲ್ಲಾಹನಿಗೆ ಸ್ಪಷ್ಟ ಜ್ಞಾನವಿದೆ. ಅವನು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

---

وَتِلۡكَ ٱلۡأَمۡثَٰلُ نَضۡرِبُهَا لِلنَّاسِۖ وَمَا يَعۡقِلُهَآ إِلَّا ٱلۡعَٰلِمُونَ ۝٤٣

43. ನಾವು ಈ ಉದಾಹರಣೆಗಳನ್ನು ಜನರಿಗೆ ವಿವರಿಸಿಕೊಡುತ್ತೇವೆ. ಜ್ಞಾನವಿರುವವರು ಮಾತ್ರ ಅವುಗಳನ್ನು ಅರ್ಥಮಾಡಿಕೊಳ್ಳುತ್ತಾರೆ.

---

خَلَقَ ٱللَّهُ ٱلسَّمَٰوَٰتِ وَٱلۡأَرۡضَ بِٱلۡحَقِّۚ إِنَّ فِي ذَٰلِكَ لَأٓيَةٗ لِّلۡمُؤۡمِنِينَ ۝٤٤

44. ಅಲ್ಲಾಹು ಭೂಮ್ಯಾಕಾಶಗಳನ್ನು ಸತ್ಯ ಸಮೇತ ಸೃಷ್ಟಿಸಿದ್ದಾನೆ. ನಿಶ್ಚಯವಾಗಿಯೂ ಅದರಲ್ಲಿ ಸತ್ಯವಿಶ್ವಾಸಿಗಳಿಗೆ ದೃಷ್ಟಾಂತವಿದೆ.

---

ٱتۡلُ مَآ أُوحِيَ إِلَيۡكَ مِنَ ٱلۡكِتَٰبِ وَأَقِمِ ٱلصَّلَوٰةَۖ إِنَّ ٱلصَّلَوٰةَ تَنۡهَىٰ عَنِ ٱلۡفَحۡشَآءِ وَٱلۡمُنكَرِۗ وَلَذِكۡرُ ٱللَّهِ أَكۡبَرُۗ وَٱللَّهُ يَعۡلَمُ مَا تَصۡنَعُونَ ۝٤٥

45. ನಿಮಗೆ ದೇವವಾಣಿಯ ಮೂಲಕ ನೀಡಲಾದ ಗ್ರಂಥವನ್ನು ಪಠಿಸಿರಿ ಮತ್ತು ನಮಾಝನ್ನು ಸಂಸ್ಥಾಪಿಸಿರಿ. ನಿಶ್ಚಯವಾಗಿಯೂ ನಮಾಝ್ ಅಶ್ಲೀಲ ಕೃತ್ಯಗಳಿಂದ ಮತ್ತು ದುಷ್ಕರ್ಮಗಳಿಂದ ತಡೆಯುತ್ತದೆ. ಅಲ್ಲಾಹನ ಸ್ಮರಣೆಯು ಅತಿಶ್ರೇಷ್ಠವಾಗಿದೆ. ನೀವು ಮಾಡುತ್ತಿರುವ ಕರ್ಮಗಳನ್ನು ಅಲ್ಲಾಹು ತಿಳಿಯುತ್ತಾನೆ.

---

وَلَا تُجَٰدِلُوٓاْ أَهۡلَ ٱلۡكِتَٰبِ إِلَّا بِٱلَّتِي هِيَ أَحۡسَنُ إِلَّا ٱلَّذِينَ ظَلَمُواْ مِنۡهُمۡۖ وَقُولُوٓاْ ءَامَنَّا بِٱلَّذِيٓ أُنزِلَ إِلَيۡنَا وَأُنزِلَ إِلَيۡكُمۡ وَإِلَٰهُنَا وَإِلَٰهُكُمۡ وَٰحِدٞ وَنَحۡنُ لَهُۥ مُسۡلِمُونَ ۝٤٦

46. ನೀವು ಗ್ರಂಥದವರೊಂದಿಗೆ ಅತ್ಯುತ್ತಮ ರೀತಿಯಲ್ಲೇ ವಿನಾ ಸಂವಾದ ಮಾಡಬೇಡಿ; ಅವರಲ್ಲಿರುವ ಅಕ್ರಮಿಗಳ ಹೊರತು. ಹೇಳಿರಿ: "ನಮಗೆ ಅವತೀರ್ಣವಾಗಿರುವುದರಲ್ಲಿ ಮತ್ತು ನಿಮಗೆ ಅವತೀರ್ಣವಾಗಿರುವುದರಲ್ಲಿ ನಾವು ವಿಶ್ವಾಸವಿಟ್ಟಿದ್ದೇವೆ. ನಮ್ಮ ದೇವನು ಮತ್ತು ನಿಮ್ಮ ದೇವನು ಒಬ್ಬನೇ. ನಾವು ಅವನಿಗೆ ಶರಣಾಗಿದ್ದೇವೆ."

---

وَكَذَٰلِكَ أَنزَلۡنَآ إِلَيۡكَ ٱلۡكِتَٰبَۚ فَٱلَّذِينَ ءَاتَيۡنَٰهُمُ ٱلۡكِتَٰبَ يُؤۡمِنُونَ بِهِۦۖ وَمِنۡ هَٰٓؤُلَآءِ مَن يُؤۡمِنُ

47. ಈ ರೀತಿ ನಾವು ನಿಮಗೆ ನಮ್ಮ ಗ್ರಂಥವನ್ನು ಅವತೀರ್ಣಗೊಳಿಸಿದ್ದೇವೆ. ನಾವು (ಇದಕ್ಕೆ ಮೊದಲು) ಯಾರಿಗೆ ಗ್ರಂಥವನ್ನು ನೀಡಿದ್ದೇವೋ ಅವರು ಇದರಲ್ಲಿ ವಿಶ್ವಾಸವಿಡುತ್ತಾರೆ. ಇವರಲ್ಲೂ

بِهِۦۚ وَمَا يَجۡحَدُ بِـَٔايَٰتِنَآ إِلَّا ٱلۡكَٰفِرُونَ ﴿٤٧﴾

(ಮಕ್ಕಾ ನಿವಾಸಿಗಳಲ್ಲೂ) ಕೂಡ ಕೆಲವರು ಅದರಲ್ಲಿ ವಿಶ್ವಾ-ಸವಿಡುತ್ತಾರೆ. ಸತ್ಯನಿಷೇಧಿಗಳ ಹೊರತು ಇನ್ನಾರೂ ನಮ್ಮ ದೃಷ್ಟಾಂತಗಳನ್ನು ನಿಷೇಧಿಸುವುದಿಲ್ಲ.

---

وَمَا كُنتَ تَتۡلُواْ مِن قَبۡلِهِۦ مِن كِتَٰبٖ وَلَا تَخُطُّهُۥ بِيَمِينِكَۖ إِذٗا لَّٱرۡتَابَ ٱلۡمُبۡطِلُونَ ﴿٤٨﴾

48. (ಪ್ರವಾದಿಯವರೇ) ಇದಕ್ಕೆ ಮೊದಲು ನೀವು ಯಾವುದೇ ಗ್ರಂಥವನ್ನು ಪಠಿಸಿರಲಿಲ್ಲ. ನಿಮ್ಮ ಬಲಗೈಯಿಂದ ಅದನ್ನು ಬರೆಯಲೂ ಇಲ್ಲ. ಹಾಗಿರುತ್ತಿದ್ದರೆ ಈ ಸತ್ಯನಿಷೇಧಿಗಳಿಗೆ ಸಂಶಯಪಡಬಹುದಾಗಿತ್ತು.

---

بَلۡ هُوَ ءَايَٰتُۢ بَيِّنَٰتٞ فِي صُدُورِ ٱلَّذِينَ أُوتُواْ ٱلۡعِلۡمَۚ وَمَا يَجۡحَدُ بِـَٔايَٰتِنَآ إِلَّا ٱلظَّٰلِمُونَ ﴿٤٩﴾

49. ಬದಲಿಗೆ, ಇದು (ಕುರ್‌ಆನ್) ಜ್ಞಾನ ನೀಡಲಾದವರ ಹೃದಯಗಳಲ್ಲಿ ಭದ್ರವಾಗಿ ನೆಲೆಯೂರಿರುವ ಸ್ಪಷ್ಟ ವಚನಗಳಾಗಿವೆ. ಅಕ್ರಮಿಗಳ ಹೊರತು ಇನ್ನಾರೂ ನಮ್ಮ ದೃಷ್ಟಾಂತಗಳನ್ನು ನಿಷೇಧಿಸುವುದಿಲ್ಲ.

---

وَقَالُواْ لَوۡلَآ أُنزِلَ عَلَيۡهِ ءَايَٰتٞ مِّن رَّبِّهِۦۖ قُلۡ إِنَّمَا ٱلۡأٓيَٰتُ عِندَ ٱللَّهِ وَإِنَّمَآ أَنَا۠ نَذِيرٞ مُّبِينٌ ﴿٥٠﴾

50. ಸತ್ಯನಿಷೇಧಿಗಳು ಹೇಳುತ್ತಾರೆ: “ಇವನಿಗೆ (ಪ್ರವಾದಿಗೆ) ಇವನ ಪರಿಪಾಲಕನಿಂದ (ಅಲ್ಲಾಹನಿಂದ) ದೃಷ್ಟಾಂತಗಳನ್ನು (ಪವಾಡಗಳನ್ನು) ಏಕೆ ಇಳಿಸಿಕೊಡಲಾಗುವುದಿಲ್ಲ?” ಹೇಳಿರಿ: “ದೃಷ್ಟಾಂತಗಳೆಲ್ಲವೂ ಅಲ್ಲಾಹನ ಬಳಿಯಿವೆ. ನಾನೊಬ್ಬ ಸ್ಪಷ್ಟ ಮುನ್ನೆಚ್ಚರಿಕೆಗಾರ ಮಾತ್ರ.”

---

أَوَلَمۡ يَكۡفِهِمۡ أَنَّآ أَنزَلۡنَا عَلَيۡكَ ٱلۡكِتَٰبَ يُتۡلَىٰ عَلَيۡهِمۡۚ إِنَّ فِي ذَٰلِكَ لَرَحۡمَةٗ وَذِكۡرَىٰ لِقَوۡمٖ يُؤۡمِنُونَ ﴿٥١﴾

51. ನಾವು ನಿಮಗೆ ಗ್ರಂಥವನ್ನು ಅವತೀರ್ಣಗೊಳಿಸಿದ್ದೇವೆ ಎಂಬುದು ಅವರಿಗೆ (ದೃಷ್ಟಾಂತವಾಗಿ) ಸಾಕಾಗುವುದಿಲ್ಲವೇ? ಅದನ್ನು ಅವರಿಗೆ ಓದಿಕೊಡಲಾಗುತ್ತಿದೆ. ನಿಶ್ಚಯವಾಗಿಯೂ ಅದರಲ್ಲಿ ಸತ್ಯವಿಶ್ವಾಸಿಗಳಾದ ಜನರಿಗೆ ದಯೆ ಮತ್ತು ಉಪದೇಶವಿದೆ.

---

قُلۡ كَفَىٰ بِٱللَّهِ بَيۡنِي وَبَيۡنَكُمۡ شَهِيدٗاۖ يَعۡلَمُ مَا فِي ٱلسَّمَٰوَٰتِ وَٱلۡأَرۡضِۗ وَٱلَّذِينَ ءَامَنُواْ بِٱلۡبَٰطِلِ وَكَفَرُواْ بِٱللَّهِ أُوْلَٰٓئِكَ هُمُ ٱلۡخَٰسِرُونَ ﴿٥٢﴾

52. ಹೇಳಿರಿ: “ನನ್ನ ಮತ್ತು ನಿಮ್ಮ ನಡುವೆ ಸಾಕ್ಷಿಯಾಗಿ ಅಲ್ಲಾಹು ಸಾಕು. ಅವನು ಭೂಮ್ಯಾಕಾಶಗಳಲ್ಲಿರುವ ಎಲ್ಲವನ್ನೂ ತಿಳಿಯುತ್ತಾನೆ. ಮಿಥ್ಯದಲ್ಲಿ ವಿಶ್ವಾಸವಿಡುವವರು ಮತ್ತು ಅಲ್ಲಾಹನನ್ನು ನಿಷೇಧಿಸುವವರು ಯಾರೋ ಅವರೇ ನಷ್ಟ ಹೊಂದಿದವರು.”

---

وَيَسۡتَعۡجِلُونَكَ بِٱلۡعَذَابِ وَلَوۡلَآ أَجَلٞ مُّسَمّٗى لَّجَآءَهُمُ ٱلۡعَذَابُۚ وَلَيَأۡتِيَنَّهُم بَغۡتَةٗ وَهُمۡ لَا يَشۡعُرُونَ ﴿٥٣﴾

53. ಅವರು ನಿಮ್ಮೊಡನೆ ಶಿಕ್ಷೆಗಾಗಿ ತ್ವರೆ ಮಾಡುತ್ತಾರೆ. ಒಂದು ನಿಶ್ಚಿತ ಅವಧಿಯು ಇಲ್ಲದಿರುತ್ತಿದ್ದರೆ ಶಿಕ್ಷೆಯು ಈಗಾಗಲೇ ಅವರ ಬಳಿಗೆ ಬಂದಿರುತ್ತಿತ್ತು. ಅದು ಅವರ ಬಳಿಗೆ ಹಠಾತ್ತನೆ ಬರುತ್ತದೆ. ಆಗ ಅವರು ಅದನ್ನು ನಿರೀಕ್ಷಿಸಿಯೇ ಇರುವುದಿಲ್ಲ.

---

يَسۡتَعۡجِلُونَكَ بِٱلۡعَذَابِ وَإِنَّ جَهَنَّمَ لَمُحِيطَةُۢ بِٱلۡكَٰفِرِينَ ﴿٥٤﴾

54. ಅವರು ನಿಮ್ಮೊಡನೆ ಶಿಕ್ಷೆಗಾಗಿ ತ್ವರೆ ಮಾಡುತ್ತಾರೆ. ನಿಶ್ಚಯ ವಾಗಿಯೂ ನರಕವು ಸತ್ಯನಿಷೇಧಿಗಳನ್ನು ಆವರಿಸಿಕೊಂಡಿದೆ.

**55.** ಶಿಕ್ಷೆಯು ಅವರನ್ನು ಮೇಲ್ಭಾಗದಿಂದ ಮತ್ತು ಅವರ ಕಾಲುಗಳ ತಳಭಾಗದಿಂದ ಆವರಿಸಿಕೊಳ್ಳುವ ದಿನ! ಅಲ್ಲಾಹು ಹೇಳುವನು: “ನೀವು ಮಾಡಿದ ಕರ್ಮಗಳ ರುಚಿಯನ್ನು ನೋಡಿರಿ.”

يَوۡمَ يَغۡشَىٰهُمُ ٱلۡعَذَابُ مِن فَوۡقِهِمۡ وَمِن تَحۡتِ
أَرۡجُلِهِمۡ وَيَقُولُ ذُوقُواْ مَا كُنتُمۡ تَعۡمَلُونَ ٥٥

**56.** ನನ್ನ ಸತ್ಯವಿಶ್ವಾಸಿ ದಾಸರೇ! ನನ್ನ ಭೂಮಿ ವಿಶಾಲವಾಗಿದೆ. ಆದ್ದರಿಂದ ನೀವು ನನ್ನನ್ನು ಮಾತ್ರ ಆರಾಧಿಸಿರಿ.

يَٰعِبَادِيَ ٱلَّذِينَ ءَامَنُوٓاْ إِنَّ أَرۡضِي وَٰسِعَةٞ فَإِيَّٰيَ
فَٱعۡبُدُونِ ٥٦

**57.** ಪ್ರತಿಯೊಂದು ಆತ್ಮವೂ ಮರಣದ ರುಚಿಯನ್ನು ನೋಡಲಿದೆ. ನಂತರ ನಿಮ್ಮನ್ನು ನಮ್ಮ ಬಳಿಗೇ ಮರಳಿಸಲಾಗುವುದು.

كُلُّ نَفۡسٖ ذَآئِقَةُ ٱلۡمَوۡتِۖ ثُمَّ إِلَيۡنَا تُرۡجَعُونَ ٥٧

**58.** ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ ಅವರಿಗೆ ನಾವು ಸ್ವರ್ಗದಲ್ಲಿ, ತಳಭಾಗದಿಂದ ನದಿಗಳು ಹರಿಯುವ ಉನ್ನತ ಮಹಲುಗಳಲ್ಲಿ ವಾಸ್ತವ್ಯವನ್ನು ಮಾಡಿಕೊಡುವೆವು. ಅದರಲ್ಲಿ ಅವರು ಶಾಶ್ವತವಾಗಿ ವಾಸಿಸುವರು. ಕರ್ಮವೆಸಗುವ-ವರಿಗೆ ದೊರೆಯುವ ಪ್ರತಿಫಲವು ಎಷ್ಟು ಉತ್ತಮವಾಗಿದೆ!

وَٱلَّذِينَ ءَامَنُواْ وَعَمِلُواْ ٱلصَّٰلِحَٰتِ لَنُبَوِّئَنَّهُم
مِّنَ ٱلۡجَنَّةِ غُرَفٗا تَجۡرِي مِن تَحۡتِهَا ٱلۡأَنۡهَٰرُ
خَٰلِدِينَ فِيهَاۚ نِعۡمَ أَجۡرُ ٱلۡعَٰمِلِينَ ٥٨

**59.** ಅವರು ಯಾರೆಂದರೆ, ತಾಳ್ಮೆಯಿಂದ ಜೀವಿಸುವವರು ಮತ್ತು ತಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ಭರವಸೆಯಿಡುವವರು.

ٱلَّذِينَ صَبَرُواْ وَعَلَىٰ رَبِّهِمۡ يَتَوَكَّلُونَ ٥٩

**60.** ಎಷ್ಟೋ ಜೀವಿಗಳಿವೆ. ಅವು ಅವುಗಳ ಆಹಾರವನ್ನು ಹೊತ್ತುಕೊಂಡು ಸಾಗುವುದಿಲ್ಲ. ಅವುಗಳಿಗೂ ನಿಮಗೂ ಅಲ್ಲಾಹು ಆಹಾರವನ್ನು ನೀಡುತ್ತಾನೆ. ಅವನು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

وَكَأَيِّن مِّن دَآبَّةٖ لَّا تَحۡمِلُ رِزۡقَهَا ٱللَّهُ يَرۡزُقُهَا
وَإِيَّاكُمۡۚ وَهُوَ ٱلسَّمِيعُ ٱلۡعَلِيمُ ٦٠

**61.** “ಭೂಮ್ಯಾಕಾಶಗಳನ್ನು ಸೃಷ್ಟಿಸಿದ್ದು ಯಾರು? ಸೂರ್ಯ-ಚಂದ್ರ-ರನ್ನು ಅಧೀನಗೊಳಿಸಿದ್ದು ಯಾರು?” ಎಂದು ನೀವೇನಾದರೂ ಅವರೊಡನೆ (ಸತ್ಯನಿಷೇಧಿಗಳೊಡನೆ) ಕೇಳಿದರೆ ಅವರು ಖಂಡಿತ “ಅಲ್ಲಾಹು” ಎಂದೇ ಉತ್ತರಿಸುತ್ತಾರೆ. ಹಾಗಿದ್ದೂ ಅವರನ್ನು (ಸತ್ಯದಿಂದ) ತಪ್ಪಿಸಲಾಗುತ್ತಿರುವುದು ಹೇಗೆ?

وَلَئِن سَأَلۡتَهُم مَّنۡ خَلَقَ ٱلسَّمَٰوَٰتِ وَٱلۡأَرۡضَ
وَسَخَّرَ ٱلشَّمۡسَ وَٱلۡقَمَرَ لَيَقُولُنَّ ٱللَّهُۖ فَأَنَّىٰ
يُؤۡفَكُونَ ٦١

**62.** ಅಲ್ಲಾಹು ಅವನ ದಾಸರಲ್ಲಿ ಅವನು ಇಚ್ಛಿಸುವವರಿಗೆ ಉಪಜೀವನವನ್ನು ವಿಶಾಲಗೊಳಿಸುತ್ತಾನೆ ಮತ್ತು ಅವನು ಇಚ್ಛಿಸುವವರಿಗೆ ಅದನ್ನು ಇಕ್ಕಟ್ಟುಗೊಳಿಸು-ತ್ತಾನೆ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ವಿಷಯಗಳನ್ನು ತಿಳಿದವನಾಗಿದ್ದಾನೆ.

ٱللَّهُ يَبۡسُطُ ٱلرِّزۡقَ لِمَن يَشَآءُ مِنۡ عِبَادِهِۦ
وَيَقۡدِرُ لَهُۥٓۚ إِنَّ ٱللَّهَ بِكُلِّ شَيۡءٍ عَلِيمٞ ٦٢

**63.** “ಆಕಾಶದಿಂದ ಮಳೆಯನ್ನು ಸುರಿಸಿ ಅದರ ಮೂಲಕ ನಿರ್ಜೀವ ಭೂಮಿಗೆ ಜೀವ ನೀಡುವುದು ಯಾರು?” ಎಂದು ನೀವು ಅವರೊಡನೆ ಕೇಳಿದರೆ ಅವರು ಖಂಡಿತ “ಅಲ್ಲಾಹು” ಎಂದೇ

وَلَئِن سَأَلۡتَهُم مَّن نَّزَّلَ مِنَ ٱلسَّمَآءِ مَآءٗ فَأَحۡيَا
بِهِ ٱلۡأَرۡضَ مِنۢ بَعۡدِ مَوۡتِهَا لَيَقُولُنَّ ٱللَّهُۚ قُلِ

ٱلْحَمْدُ لِلَّهِ ۚ بَلْ أَكْثَرُهُمْ لَا يَعْقِلُونَ ﴿٦٣﴾

ಉತ್ತರಿಸುತ್ತಾರೆ. ಹೇಳಿರಿ: "ಅಲ್ಲಾಹನಿಗೆ ಸರ್ವಸ್ತುತಿ. ಆದರೆ ಅವರಲ್ಲಿ ಹೆಚ್ಚಿನವರು ಅರ್ಥಮಾಡಿಕೊಳ್ಳುವುದಿಲ್ಲ."

---

وَمَا هَٰذِهِ ٱلْحَيَوٰةُ ٱلدُّنْيَآ إِلَّا لَهْوٌ وَلَعِبٌ ۚ وَإِنَّ ٱلدَّارَ ٱلْءَاخِرَةَ لَهِىَ ٱلْحَيَوَانُ ۚ لَوْ كَانُوا۟ يَعْلَمُونَ ﴿٦٤﴾

64. ಈ ಇಹಲೋಕ ಜೀವನವು ಕೇವಲ ಆಟ ಮತ್ತು ಮನೋರಂಜನೆಯಾಗಿದೆ. ಪರಲೋಕ ಜೀವನವೇ ನಿಜವಾದ ಜೀವನ. ಅವರು ತಿಳಿದಿರುತ್ತಿದ್ದರೆ!

---

فَإِذَا رَكِبُوا۟ فِى ٱلْفُلْكِ دَعَوُا۟ ٱللَّهَ مُخْلِصِينَ لَهُ ٱلدِّينَ فَلَمَّا نَجَّىٰهُمْ إِلَى ٱلْبَرِّ إِذَا هُمْ يُشْرِكُونَ ﴿٦٥﴾

65. ಅವರು (ಬಹುದೇವಾರಾಧಕರು) ನಾವೆಯನ್ನು ಏರಿದರೆ ಆರಾಧನೆಯನ್ನು ಅಲ್ಲಾಹನಿಗೆ ನಿಷ್ಕಳಂಕಗೊಳಿಸಿ ಅವನನ್ನು ಮಾತ್ರ ಕರೆದು ಪ್ರಾರ್ಥಿಸುತ್ತಾರೆ. ನಂತರ ಅವನು ಅವರನ್ನು ಸುರಕ್ಷಿತವಾಗಿ ದಡಕ್ಕೆ ತಲುಪಿಸಿದರೆ ಅಗೋ! ಅವರು ಅವನೊಡನೆ ಸಹಭಾಗಿತ್ವ (ಶಿರ್ಕ್) ಮಾಡುತ್ತಾರೆ.

---

لِيَكْفُرُوا۟ بِمَآ ءَاتَيْنَٰهُمْ وَلِيَتَمَتَّعُوا۟ ۖ فَسَوْفَ يَعْلَمُونَ ﴿٦٦﴾

66. ನಾವು ಅವರಿಗೆ ದಯಪಾಲಿಸಿರುವುದನ್ನು ನಿಷೇಧಿಸಲು ಮತ್ತು ಆನಂದವಾಗಿ ಜೀವನ ನಡೆಸುತ್ತಿರಲು. ಅವರಿಗೆ ಸದ್ಯವೇ ತಿಳಿಯಲಿದೆ.

---

أَوَلَمْ يَرَوْا۟ أَنَّا جَعَلْنَا حَرَمًا ءَامِنًا وَيُتَخَطَّفُ ٱلنَّاسُ مِنْ حَوْلِهِمْ ۚ أَفَبِٱلْبَٰطِلِ يُؤْمِنُونَ وَبِنِعْمَةِ ٱللَّهِ يَكْفُرُونَ ﴿٦٧﴾

67. ನಾವು ನಿರ್ಭಯವಾದ ಒಂದು ಪವಿತ್ರ ಸ್ಥಳವನ್ನು (ಹರಂ) ನಿರ್ಮಿಸಿದ್ದನ್ನು ಅವರು ನೋಡಿಲ್ಲವೇ? ಅವರ ಸುತ್ತುಮುತ್ತಲಿಂದ ಜನರನ್ನು ಅಪಹರಿಸಲಾಗುತ್ತಿದೆ.[1] ಆದರೂ ಅವರು ಮಿಥ್ಯದಲ್ಲಿ ವಿಶ್ವಾಸವಿಟ್ಟು ಅಲ್ಲಾಹನ ಅನುಗ್ರಹವನ್ನು ನಿಷೇಧಿಸುತ್ತಿದ್ದಾರೆಯೇ?

---

وَمَنْ أَظْلَمُ مِمَّنِ ٱفْتَرَىٰ عَلَى ٱللَّهِ كَذِبًا أَوْ كَذَّبَ بِٱلْحَقِّ لَمَّا جَآءَهُۥٓ ۚ أَلَيْسَ فِى جَهَنَّمَ مَثْوًى لِّلْكَٰفِرِينَ ﴿٦٨﴾

68. ಅಲ್ಲಾಹನ ಹೆಸರಲ್ಲಿ ಸುಳ್ಳು ಆರೋಪಿಸುವವನು ಮತ್ತು ಸತ್ಯವು ಬಂದಾಗ ಅದನ್ನು ನಿಷೇಧಿಸಿದವನಿಗಿಂತ ದೊಡ್ಡ ಅಕ್ರಮಿ ಯಾರು? ಇಂತಹ ಸತ್ಯನಿಷೇಧಿಗಳಿಗೆ ನರಕದಲ್ಲಿ ವಾಸ್ತವ್ಯವಿಲ್ಲವೇ?

---

وَٱلَّذِينَ جَٰهَدُوا۟ فِينَا لَنَهْدِيَنَّهُمْ سُبُلَنَا ۚ وَإِنَّ ٱللَّهَ لَمَعَ ٱلْمُحْسِنِينَ ﴿٦٩﴾

69. ನಮ್ಮ ಮಾರ್ಗದಲ್ಲಿ ಪರಿಶ್ರಮಪಡುವವರು ಯಾರೋ ಅವರಿಗೆ ನಾನು ನಮ್ಮ ಮಾರ್ಗಗಳನ್ನು ಖಂಡಿತ ತೋರಿಸುವೆವು. ನಿಶ್ಚಯವಾಗಿಯೂ ಅಲ್ಲಾಹು ಒಳಿತು ಮಾಡುವವರ ಜೊತೆಯಲ್ಲಿದ್ದಾನೆ.

---

[1] ಮಕ್ಕಾದ ಪವಿತ್ರ ಕಅಬಾ ಮತ್ತು ಅದರ ಪರಿಸರವನ್ನು ಇಸ್ಲಾಮೀಪೂರ್ವ ಕಾಲದಿಂದಲೇ ಜನರು ಪವಿತ್ರವೆಂದು ಪರಿಗಣಿಸಿದ್ದರು. ಅಲ್ಲಿ ಕೊಲೆ, ದರೋಡೆ, ಯುದ್ಧ, ಶತ್ರುಗಳ ದಾಳಿ ನಡೆಯುತ್ತಿರಲಿಲ್ಲ. ಆದರೆ ಮಕ್ಕಾದ ಸುತ್ತಮುತ್ತಲಿನ ಪರಿಸರ ಇದಕ್ಕೆ ತದ್ವಿರುದ್ಧವಾಗಿತ್ತು.

# 30. ಅರ್ರೂಮ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಅಲಿಫ್-ಲಾಮ್-ಮೀಮ್.

الٓمٓ ١

2. ರೋಮನ್ನರು ಪರಾಜಿತರಾದರು.

غُلِبَتِ ٱلرُّومُ ٢

3. ಸಮೀಪದ ಪ್ರದೇಶದಲ್ಲಿ. ತಮ್ಮ ಪರಾಜಯದ ಬಳಿಕ ಅವರು ಸದ್ಯವೇ ವಿಜಯಿಗಳಾಗುವರು.[1]

فِيٓ أَدۡنَى ٱلۡأَرۡضِ وَهُم مِّنۢ بَعۡدِ غَلَبِهِمۡ سَيَغۡلِبُونَ ٣

4. ಕೆಲವೇ ವರ್ಷಗಳಲ್ಲಿ.[2] ಅದರ ಮುಂದಿನ ಮತ್ತು ಹಿಂದಿನ ಸಂಗತಿಗಳ ನಿಯಂತ್ರಣವು ಅಲ್ಲಾಹನ ಕೈಯಲ್ಲಿದೆ. ಅಂದು ಸತ್ಯ-ವಿಶ್ವಾಸಿಗಳು ಸಂಭ್ರಮಿಸುವರು.

فِي بِضۡعِ سِنِينَۗ لِلَّهِ ٱلۡأَمۡرُ مِن قَبۡلُ وَمِنۢ بَعۡدُۚ وَيَوۡمَئِذٖ يَفۡرَحُ ٱلۡمُؤۡمِنُونَ ٤

5. ಅಲ್ಲಾಹನ ಸಹಾಯದಿಂದ. ಅಲ್ಲಾಹು ಅವನು ಬಯಸುವವರಿಗೆ ಸಹಾಯ ಮಾಡುತ್ತಾನೆ. ಅವನು ಪ್ರಬಲನು ಮತ್ತು ದಯೆ ತೋರುವವನಾಗಿದ್ದಾನೆ.

بِنَصۡرِ ٱللَّهِۚ يَنصُرُ مَن يَشَآءُۖ وَهُوَ ٱلۡعَزِيزُ ٱلرَّحِيمُ ٥

6. ಇದು ಅಲ್ಲಾಹನ ವಾಗ್ದಾನವಾಗಿದೆ. ಅಲ್ಲಾಹು ಅವನ ವಾಗ್ದಾನವನ್ನು ಉಲ್ಲಂಘಿಸುವುದಿಲ್ಲ. ಆದರೆ ಜನರಲ್ಲಿ ಹೆಚ್ಚಿನವರು ತಿಳಿಯುವುದಿಲ್ಲ.

وَعۡدَ ٱللَّهِۖ لَا يُخۡلِفُ ٱللَّهُ وَعۡدَهُۥ وَلَٰكِنَّ أَكۡثَرَ ٱلنَّاسِ لَا يَعۡلَمُونَ ٦

7. ಅವರು ಇಹಲೋಕ ಜೀವನದ ಬಹಿರಂಗ ವಿಷಯಗಳನ್ನು ಮಾತ್ರ ತಿಳಿದಿದ್ದಾರೆ. ಆದರೆ ಪರಲೋಕದ ಬಗ್ಗೆ ಅವರಿಗೆ ಯಾವುದೇ ಜ್ಞಾನವಿಲ್ಲ.

يَعۡلَمُونَ ظَٰهِرٗا مِّنَ ٱلۡحَيَوٰةِ ٱلدُّنۡيَا وَهُمۡ عَنِ ٱلۡأٓخِرَةِ هُمۡ غَٰفِلُونَ ٧

8. ಅವರು ಸ್ವಯಂ ಆಲೋಚಿಸುವುದಿಲ್ಲವೇ? ಅಲ್ಲಾಹು ಭೂಮ್ಯಾಕಾಶಗಳನ್ನು ಹಾಗೂ ಅವುಗಳ ನಡುವೆಯಿರುವ ಎಲ್ಲಾ ವಸ್ತುಗಳನ್ನು ಸತ್ಯ ಸಮೇತವಾಗಿ ಮತ್ತು ಒಂದು ನಿಶ್ಚಿತ

أَوَلَمۡ يَتَفَكَّرُواْ فِيٓ أَنفُسِهِمۗ مَّا خَلَقَ ٱللَّهُ ٱلسَّمَٰوَٰتِ وَٱلۡأَرۡضَ وَمَا بَيۡنَهُمَآ إِلَّا بِٱلۡحَقِّ

---

[1] ಪ್ರವಾದಿ ಮುಹಮ್ಮದರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಕಾಲದಲ್ಲಿ ಎರಡು ಮಹಾ ಸಾಮ್ರಾಜ್ಯಗಳು ಅಸ್ತಿತ್ವ-ದಲ್ಲಿದ್ದವು. ರೋಮನ್ ಸಾಮ್ರಾಜ್ಯ ಮತ್ತು ಪರ್ಶಿಯನ್ ಸಾಮ್ರಾಜ್ಯ. ಪರ್ಶಿಯನ್ನರು ಅಗ್ನಿಪೂಜಕರಾಗಿದ್ದರು ಮತ್ತು ರೋಮನ್ನರು ಅಹ್ಲೆ ಕಿತಾಬ್ (ಗ್ರಂಥ ನೀಡಲಾದವರು) ಆಗಿದ್ದರು. ಮಕ್ಕಾದ ಬಹುದೇವಾರಾಧಕರು ಪರ್ಶಿಯನ್ನರನ್ನು ಬೆಂಬಲಿಸುತ್ತಿದ್ದರು. ಏಕೆಂದರೆ ಅವರು ವಿಶ್ವಾಸ-ಆಚಾರಗಳಲ್ಲಿ ಸಾಮ್ಯತೆಯಿತ್ತು. ಮುಸಲ್ಮಾನರು ರೋಮನ್ನರ ಪರವಾಗಿದ್ದರು. ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಪ್ರವಾದಿಯಾದ ಕೆಲವೇ ವರ್ಷಗಳಲ್ಲಿ ಪರ್ಶಿಯನ್ನರು ರೋಮನ್ ಸಾಮ್ರಾಜ್ಯದ ಮೇಲೆ ದಾಳಿ ಮಾಡಿ ಅವರನ್ನು ಸೋಲಿಸಿದರು. ಇದರಿಂದ ಮಕ್ಕಾದ ಬಹುದೇವರಾಧಕರು ಹಿರಿ-ಹಿರಿ ಹಿಗ್ಗುತ್ತಾ ಮುಸ್ಲಿಮರನ್ನು ಮೂದಲಿಸತೊಡಗಿದರು. ಆಗ ಅಲ್ಲಾಹು ಈ ವಚನಗಳನ್ನು ಅವತೀರ್ಣಗೊಳಿಸಿದನು.

[2] ಅಂದರೆ ಮೂರರಿಂದ ಒಂಬತ್ತು ವರ್ಷಗಳೊಳಗೆ. ಕುರ್‌ಆನ್‌ನ ಈ ಭವಿಷ್ಯ ನುಡಿ ಸತ್ಯವಾಯಿತು. ಏಳು ವರ್ಷಗಳಲ್ಲಿ ರೋಮನ್ನರು ಪರ್ಶಿ-ಯನ್ನರನ್ನು ಸೋಲಿಸಿ ತಮ್ಮ ಪ್ರದೇಶಗಳನ್ನು ಮರಳಿ ವಶಪಡಿಸಿದರು.

ಅವಧಿಯವರೆಗೆ ಮಾತ್ರ ಸೃಷ್ಟಿಸಿದ್ದಾನೆ. ಜನರಲ್ಲಿ ಹೆಚ್ಚಿನವರು ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಭೇಟಿಯಾಗುವುದನ್ನು ನಿಷೇಧಿಸಿದವರಾಗಿದ್ದಾರೆ.

وَأَجَلٖ مُّسَمًّىۗ وَإِنَّ كَثِيرٗا مِّنَ ٱلنَّاسِ بِلِقَآيِٕ
رَبِّهِمۡ لَكَٰفِرُونَ ٨

---

9. ಅವರು ಭೂಮಿಯಲ್ಲಿ ಸಂಚರಿಸಿ, ಅವರಿಗಿಂತ ಮೊದಲಿನವರ ಅಂತ್ಯವು ಹೇಗಿತ್ತೆಂದು ನೋಡುವುದಿಲ್ಲವೇ? ಅವರು ಇವರಿಗಿಂತಲೂ ಹೆಚ್ಚು ಶಕ್ತಿಶಾಲಿಗಳಾಗಿದ್ದರು. ಅವರು ಭೂಮಿಯನ್ನು ಉತ್ತು ಬೇಸಾಯ ಮಾಡಿದರು. ಅವರು ಇವರಿಗಿಂತಲೂ ಹೆಚ್ಚು ಭೂಮಿಯಲ್ಲಿ ವಾಸವಾಗಿದ್ದರು. ನಮ್ಮ ಸಂದೇಶವಾಹಕರು ಸ್ಪಷ್ಟ ಸಾಕ್ಷ್ಯಾಧಾರಗಳೊಂದಿಗೆ ಅವರ ಬಳಿಗೆ ಬಂದರು. ಅಲ್ಲಾಹು ಅವರಿಗೆ ಯಾವುದೇ ಅನ್ಯಾಯ ಮಾಡಲಿಲ್ಲ. ಆದರೆ ಅವರು ಸ್ವತಃ ಅವರೊಂದಿಗೇ ಅನ್ಯಾಯವೆಸಗಿದರು.

أَوَلَمۡ يَسِيرُواْ فِي ٱلۡأَرۡضِ فَيَنظُرُواْ كَيۡفَ كَانَ
عَٰقِبَةُ ٱلَّذِينَ مِن قَبۡلِهِمۡۚ كَانُوٓاْ أَشَدَّ مِنۡهُمۡ قُوَّةٗ
وَأَثَارُواْ ٱلۡأَرۡضَ وَعَمَرُوهَآ أَكۡثَرَ مِمَّا عَمَرُوهَا
وَجَآءَتۡهُمۡ رُسُلُهُم بِٱلۡبَيِّنَٰتِۖ فَمَا كَانَ ٱللَّهُ
لِيَظۡلِمَهُمۡ وَلَٰكِن كَانُوٓاْ أَنفُسَهُمۡ يَظۡلِمُونَ ٩

---

10. ನಂತರ, ದುಷ್ಕರ್ಮವೆಸಗಿದವರ ಅಂತ್ಯವು ಅತ್ಯಂತ ದುಸ್ತರವಾಗಿತ್ತು. ಏಕೆಂದರೆ ಅವರು ಅಲ್ಲಾಹನ ವಚನಗಳನ್ನು ನಿಷೇಧಿಸಿದರು ಮತ್ತು ಅವುಗಳನ್ನು ತಮಾಷೆ ಮಾಡುತ್ತಿದ್ದರು.

ثُمَّ كَانَ عَٰقِبَةَ ٱلَّذِينَ أَسَٰٓـُٔواْ ٱلسُّوٓأَىٰٓ أَن
كَذَّبُواْ بِـَٔايَٰتِ ٱللَّهِ وَكَانُواْ بِهَا يَسۡتَهۡزِءُونَ ١٠

---

11. ಅಲ್ಲಾಹು ಪ್ರಥಮ ಬಾರಿಗೆ ಸೃಷ್ಟಿಸುತ್ತಾನೆ. ನಂತರ ಅದನ್ನು ಪುನರಾವರ್ತಿಸುತ್ತಾನೆ. ನಂತರ ನಿಮ್ಮನ್ನು ಅವನ ಬಳಿಗೇ ಮರಳಿಸಲಾಗುವುದು.

ٱللَّهُ يَبۡدَؤُاْ ٱلۡخَلۡقَ ثُمَّ يُعِيدُهُۥ ثُمَّ
إِلَيۡهِ تُرۡجَعُونَ ١١

---

12. ಅಂತ್ಯಸಮಯವು ಸಂಭವಿಸುವ ದಿನ ಅಪರಾಧಿಗಳು ಹತಾಶರಾಗುವರು.

وَيَوۡمَ تَقُومُ ٱلسَّاعَةُ يُبۡلِسُ ٱلۡمُجۡرِمُونَ ١٢

---

13. ಅವರು ಅಲ್ಲಾಹನೊಂದಿಗೆ ಸಹಭಾಗಿಗಳನ್ನಾಗಿ ಮಾಡಿದವರಲ್ಲಿ (ದೇವರುಗಳಲ್ಲಿ) ಯಾರೂ ಕೂಡ ಅವರಿಗೆ ಶಿಫಾರಸು ಮಾಡುವುದಿಲ್ಲ. ಸ್ವತಃ ಅವರೇ ಆ ಸಹಭಾಗಿಗಳನ್ನು ನಿಷೇಧಿಸುವರು.

وَلَمۡ يَكُن لَّهُم مِّن شُرَكَآئِهِمۡ شُفَعَٰٓؤُاْ وَكَانُواْ
بِشُرَكَآئِهِمۡ كَٰفِرِينَ ١٣

---

14. ಅಂತ್ಯಸಮಯವು ಸಂಭವಿಸುವ ದಿನ. ಅಂದು ಅವರು ಪರಸ್ಪರ ಬೇರ್ಪಡುವರು.

وَيَوۡمَ تَقُومُ ٱلسَّاعَةُ يَوۡمَئِذٖ يَتَفَرَّقُونَ ١٤

---

15. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ ಅವರು ಉದ್ಯಾನವನದಲ್ಲಿ ಆನಂದದಿಂದ ನಲಿದಾಡುವರು.

فَأَمَّا ٱلَّذِينَ ءَامَنُواْ وَعَمِلُواْ ٱلصَّٰلِحَٰتِ فَهُمۡ فِي
رَوۡضَةٖ يُحۡبَرُونَ ١٥

---

16. ಆದರೆ ಸತ್ಯನಿಷೇಧಿಗಳು ಮತ್ತು ನಮ್ಮ ವಚನಗಳನ್ನು ಹಾಗೂ ಪರಲೋಕದ ಭೇಟಿಯನ್ನು ನಿಷೇಧಿಸಿದವರು ಯಾರೋ ಅವರನ್ನು ಶಿಕ್ಷೆಗಾಗಿ ಹಾಜರುಪಡಿಸಲಾಗುವುದು.

وَأَمَّا ٱلَّذِينَ كَفَرُواْ وَكَذَّبُواْ بِـَٔايَٰتِنَا وَلِقَآيِٕ
ٱلۡأٓخِرَةِ فَأُوْلَٰٓئِكَ فِي ٱلۡعَذَابِ مُحۡضَرُونَ ١٦

17. ಸಂಜೆಯಾಗುವಾಗ ಮತ್ತು ಮುಂಜಾನೆಯಾಗುವಾಗ ಅಲ್ಲಾಹನ ಪರಿಶುದ್ಧಿಯನ್ನು ಕೊಂಡಾಡಿರಿ.

فَسُبۡحَٰنَ ٱللَّهِ حِينَ تُمۡسُونَ وَحِينَ تُصۡبِحُونَ ١٧

18. ಭೂಮ್ಯಾಕಾಶಗಳಲ್ಲಿ ಸರ್ವಸ್ತುತಿಗಳು ಅವನಿಗೆ ಮಾತ್ರ ಮೀಸಲು. ರಾತ್ರಿ ಹಾಗೂ ಮಧ್ಯಾಹ್ನದಲ್ಲೂ ಅವನ್ನು ಕೊಂಡಾಡಿರಿ.

وَلَهُ ٱلۡحَمۡدُ فِي ٱلسَّمَٰوَٰتِ وَٱلۡأَرۡضِ وَعَشِيّٗا وَحِينَ تُظۡهِرُونَ ١٨

19. ಅವನು ನಿರ್ಜೀವಿಯಿಂದ ಜೀವಿಯನ್ನು ಹೊರತರುತ್ತಾನೆ ಮತ್ತು ಜೀವಿಯಿಂದ ನಿರ್ಜೀವಿಯನ್ನು ಹೊರತರುತ್ತಾನೆ. ಭೂಮಿಯು ನಿರ್ಜೀವವಾದ ಬಳಿಕ ಅವನು ಅದಕ್ಕೆ ಜೀವವನ್ನು ನೀಡುತ್ತಾನೆ. ಇದೇ ರೀತಿ ನಿಮ್ಮನ್ನು ಕೂಡ ಹೊರತರಲಾಗುವುದು.

يُخۡرِجُ ٱلۡحَيَّ مِنَ ٱلۡمَيِّتِ وَيُخۡرِجُ ٱلۡمَيِّتَ مِنَ ٱلۡحَيِّ وَيُحۡيِ ٱلۡأَرۡضَ بَعۡدَ مَوۡتِهَاۚ وَكَذَٰلِكَ تُخۡرَجُونَ ١٩

20. ಅವನು ನಿಮ್ಮನ್ನು ಮಣ್ಣಿನಿಂದ ಸೃಷ್ಟಿಸಿದ್ದು ಅವನ ದೃಷ್ಟಾಂತಗಳಲ್ಲಿ ಒಂದಾಗಿದೆ. ನಂತರ ನೀವು (ಜಗತ್ತಿನಾದ್ಯಂತ) ಹಬ್ಬಿಕೊಂಡ ಮಾನುಕುಲವಾಗಿ ಮಾರ್ಪಟ್ಟಿರಿ.

وَمِنۡ ءَايَٰتِهِۦٓ أَنۡ خَلَقَكُم مِّن تُرَابٖ ثُمَّ إِذَآ أَنتُم بَشَرٞ تَنتَشِرُونَ ٢٠

21. ನಿಮಗೆ ನಿಮ್ಮಿಂದಲೇ ಪತ್ನಿಯರನ್ನು ಸೃಷ್ಟಿಸಿದ್ದು ಅವನ ದೃಷ್ಟಾಂತಗಳಲ್ಲಿ ಒಂದಾಗಿದೆ. ನೀವು ಅವಳಲ್ಲಿ ನೆಮ್ಮದಿಯನ್ನು ಪಡೆಯುವುದಕ್ಕಾಗಿ. ಅವನು ನಿಮ್ಮ ನಡುವೆ ಪ್ರೀತಿ ಮತ್ತು ಅನುಕಂಪವನ್ನು ಇಟ್ಟನು. ನಿಶ್ಚಯವಾಗಿಯೂ ಆಲೋಚಿಸುವ ಜನರಿಗೆ ಅದರಲ್ಲಿ ದೃಷ್ಟಾಂತಗಳಿವೆ.

وَمِنۡ ءَايَٰتِهِۦٓ أَنۡ خَلَقَ لَكُم مِّنۡ أَنفُسِكُمۡ أَزۡوَٰجٗا لِّتَسۡكُنُوٓاْ إِلَيۡهَا وَجَعَلَ بَيۡنَكُم مَّوَدَّةٗ وَرَحۡمَةًۚ إِنَّ فِي ذَٰلِكَ لَأٓيَٰتٖ لِّقَوۡمٖ يَتَفَكَّرُونَ ٢١

22. ಭೂಮ್ಯಾಕಾಶಗಳನ್ನು ಸೃಷ್ಟಿಸಿದ್ದು ಮತ್ತು ನಿಮ್ಮ ಭಾಷೆಗಳಲ್ಲಿ ಹಾಗೂ ವರ್ಣಗಳಲ್ಲಿ ವೈವಿಧ್ಯತೆಯನ್ನು ಮಾಡಿದ್ದು ಅವನ ದೃಷ್ಟಾಂತಗಳಲ್ಲಿ ಒಂದಾಗಿದೆ. ನಿಶ್ಚಯವಾಗಿಯೂ ಜ್ಞಾನವಂತರಿಗೆ ಅದರಲ್ಲಿ ದೃಷ್ಟಾಂತಗಳಿವೆ.

وَمِنۡ ءَايَٰتِهِۦ خَلۡقُ ٱلسَّمَٰوَٰتِ وَٱلۡأَرۡضِ وَٱخۡتِلَٰفُ أَلۡسِنَتِكُمۡ وَأَلۡوَٰنِكُمۡۚ إِنَّ فِي ذَٰلِكَ لَأٓيَٰتٖ لِّلۡعَٰلِمِينَ ٢٢

23. ನೀವು ರಾತ್ರಿಯಲ್ಲಿ ಮತ್ತು ಹಗಲಲ್ಲಿ ನಿದ್ದೆ ಮಾಡುವುದು ಹಾಗೂ ಅಲ್ಲಾಹನ ಔದಾರ್ಯದಿಂದ ನೀವು ಉಪಜೀವನವನ್ನು ಹುಡುಕುವುದು ಅವನ ದೃಷ್ಟಾಂತಗಳಲ್ಲಿ ಒಂದಾಗಿದೆ. ನಿಶ್ಚಯವಾಗಿಯೂ ಕಿವಿಗೊಡುವ ಜನರಿಗೆ ಅದರಲ್ಲಿ ದೃಷ್ಟಾಂತಗಳಿವೆ.

وَمِنۡ ءَايَٰتِهِۦ مَنَامُكُم بِٱلَّيۡلِ وَٱلنَّهَارِ وَٱبۡتِغَآؤُكُم مِّن فَضۡلِهِۦٓۚ إِنَّ فِي ذَٰلِكَ لَأٓيَٰتٖ لِّقَوۡمٖ يَسۡمَعُونَ ٢٣

24. ನಿಮ್ಮಲ್ಲಿ ಭಯ ಮತ್ತು ನಿರೀಕ್ಷೆಯನ್ನು ಹುಟ್ಟಿಸುತ್ತಾ ಮಿಂಚನ್ನು ತೋರಿಸುವುದು ಹಾಗೂ ಆಕಾಶದಿಂದ ಮಳೆಯನ್ನು ಸುರಿಸಿ ತನ್ಮೂಲಕ ನಿರ್ಜೀವ ಭೂಮಿಗೆ ಜೀವವನ್ನು ನೀಡುವುದು ಅವನ ದೃಷ್ಟಾಂತಗಳಲ್ಲಿ ಒಂದಾಗಿದೆ. ನಿಶ್ಚಯವಾಗಿಯೂ ಅರ್ಥಮಾಡಿ-ಕೊಳ್ಳುವ ಜನರಿಗೆ ಅದರಲ್ಲಿ ದೃಷ್ಟಾಂತಗಳಿವೆ.

وَمِنۡ ءَايَٰتِهِۦ يُرِيكُمُ ٱلۡبَرۡقَ خَوۡفٗا وَطَمَعٗا وَيُنَزِّلُ مِنَ ٱلسَّمَآءِ مَآءٗ فَيُحۡيِۦ بِهِ ٱلۡأَرۡضَ بَعۡدَ مَوۡتِهَآۚ إِنَّ فِي ذَٰلِكَ لَأٓيَٰتٖ لِّقَوۡمٖ يَعۡقِلُونَ ٢٤

25. ಭೂಮ್ಯಾಕಾಶವು ಅವನ ಆಜ್ಞೆಯಂತೆ ಅಸ್ತಿತ್ವದಲ್ಲಿರುವುದು ಅವನ ದೃಷ್ಟಾಂತಗಳಲ್ಲಿ ಒಂದಾಗಿದೆ. ನಂತರ ಅವನು ಭೂಮಿಯಿಂದ ನಿಮ್ಮನ್ನು ಒಮ್ಮೆ ಕರೆದು ಬಿಟ್ಟರೆ, ಅಗೋ! ನೀವು ಹೊರಟು ಬರುತ್ತೀರಿ.

وَمِنْ ءَايَٰتِهِۦٓ أَن تَقُومَ ٱلسَّمَآءُ وَٱلْأَرْضُ بِأَمْرِهِۦ ۚ ثُمَّ إِذَا دَعَاكُمْ دَعْوَةً مِّنَ ٱلْأَرْضِ إِذَآ أَنتُمْ تَخْرُجُونَ ٢٥

26. ಭೂಮ್ಯಾಕಾಶಗಳಲ್ಲಿರುವ ಎಲ್ಲರೂ ಅವನ ನಿಯಂತ್ರಣದಲ್ಲಿದ್ದಾರೆ. ಎಲ್ಲರೂ ಅವನ ಆಜ್ಞೆಗೆ ವಿಧೇಯರಾಗಿದ್ದಾರೆ.

وَلَهُۥ مَن فِى ٱلسَّمَٰوَٰتِ وَٱلْأَرْضِ ۖ كُلٌّ لَّهُۥ قَٰنِتُونَ ٢٦

27. ಅವನೇ ಪ್ರಥಮ ಬಾರಿಗೆ ಸೃಷ್ಟಿಸುವವನು ಮತ್ತು ನಂತರ ಅದನ್ನು ಪುನರಾವರ್ತಿಸುವವನು. ಅದು ಅವನಿಗೆ ಅತ್ಯಂತ ಸುಲಭವಾಗಿದೆ. ಅವನಿಗೆ ಆಕಾಶಗಳಲ್ಲಿ ಮತ್ತು ಭೂಮಿಯಲ್ಲಿ ಉನ್ನತ ಗುಣಲಕ್ಷಣಗಳಿವೆ. ಅವನು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَهُوَ ٱلَّذِى يَبْدَؤُا۟ ٱلْخَلْقَ ثُمَّ يُعِيدُهُۥ وَهُوَ أَهْوَنُ عَلَيْهِ ۚ وَلَهُ ٱلْمَثَلُ ٱلْأَعْلَىٰ فِى ٱلسَّمَٰوَٰتِ وَٱلْأَرْضِ ۚ وَهُوَ ٱلْعَزِيزُ ٱلْحَكِيمُ ٢٧

28. ಅಲ್ಲಾಹು ನಿಮಗೆ ನಿಮ್ಮಿಂದಲೇ ಒಂದು ಉದಾಹರಣೆಯನ್ನು ನೀಡುತ್ತಾನೆ. ನಾವು ನಿಮಗೆ ನೀಡಿದ ಸವಲತ್ತುಗಳಲ್ಲಿ ನಿಮ್ಮ ಗುಲಾಮರು ಯಾರಾದರೂ ನಿಮ್ಮ ಪಾಲುದಾರರಾಗಿದ್ದಾರೆಯೇ? ಅಂದರೆ, ನಿಮಗೆ ಮತ್ತು ಅವರಿಗೆ ಸಮಾನ ಸ್ಥಾನಮಾನವಿರುವ ರೀತಿಯಲ್ಲಿ? ನೀವು ಸ್ವತಃ ನಿಮ್ಮ ಬಗ್ಗೆ ಭಯಪಡುವಂತೆ ಅವರ ಬಗ್ಗೆಯೂ ಭಯಪಡುವ ರೀತಿಯಲ್ಲಿ? ಅರ್ಥಮಾಡಿಕೊಳ್ಳುವ ಜನರಿಗೆ ನಾವು ಈ ರೀತಿ ವಚನಗಳನ್ನು ವಿವರಿಸಿಕೊಡುತ್ತೇವೆ.

ضَرَبَ لَكُم مَّثَلًا مِّنْ أَنفُسِكُمْ ۖ هَل لَّكُم مِّن مَّا مَلَكَتْ أَيْمَٰنُكُم مِّن شُرَكَآءَ فِى مَا رَزَقْنَٰكُمْ فَأَنتُمْ فِيهِ سَوَآءٌ تَخَافُونَهُمْ كَخِيفَتِكُمْ أَنفُسَكُمْ ۚ كَذَٰلِكَ نُفَصِّلُ ٱلْءَايَٰتِ لِقَوْمٍ يَعْقِلُونَ ٢٨

29. ಆದರೆ ಅಕ್ರಮವೆಸಗಿದವರು ಯಾವುದೇ ಜ್ಞಾನವಿಲ್ಲದೆ ಅವರ ಸ್ವೇಚ್ಛೆಗಳನ್ನು ಹಿಂಬಾಲಿಸಿದರು. ಅಲ್ಲಾಹು ದಾರಿತಪ್ಪಿಸಿದವರಿಗೆ ಸನ್ಮಾರ್ಗ ತೋರಿಸಲು ಯಾರಿಗೂ ಸಾಧ್ಯವಿಲ್ಲ. ಅವರಿಗೆ ಯಾವುದೇ ಸಹಾಯಕರೂ ಇರುವುದಿಲ್ಲ.

بَلِ ٱتَّبَعَ ٱلَّذِينَ ظَلَمُوٓا۟ أَهْوَآءَهُم بِغَيْرِ عِلْمٍ ۖ فَمَن يَهْدِى مَنْ أَضَلَّ ٱللَّهُ ۖ وَمَا لَهُم مِّن نَّٰصِرِينَ ٢٩

30. ಆದ್ದರಿಂದ ನೀವು ಏಕನಿಷ್ಠರಾಗಿ ನಿಮ್ಮ ಮುಖವನ್ನು ಧರ್ಮದ ಕಡೆಗೆ ತಿರುಗಿಸಿರಿ. ಅದು ಅಲ್ಲಾಹು ಮನುಷ್ಯರನ್ನು ಸೃಷ್ಟಿಸಿದ ಸಹಜ ಮನೋಧರ್ಮವಾಗಿದೆ. ಅಲ್ಲಾಹನ ಸೃಷ್ಟಿ ನಿಯಮಕ್ಕೆ ಯಾವುದೇ ಬದಲಾವಣೆಯಿಲ್ಲ. ಅದೇ ನೇರವಾದ ಧರ್ಮ. ಆದರೆ ಮನುಷ್ಯರಲ್ಲಿ ಹೆಚ್ಚಿನವರು ತಿಳಿಯುವುದಿಲ್ಲ.

فَأَقِمْ وَجْهَكَ لِلدِّينِ حَنِيفًا ۚ فِطْرَتَ ٱللَّهِ ٱلَّتِى فَطَرَ ٱلنَّاسَ عَلَيْهَا ۚ لَا تَبْدِيلَ لِخَلْقِ ٱللَّهِ ۚ ذَٰلِكَ ٱلدِّينُ ٱلْقَيِّمُ وَلَٰكِنَّ أَكْثَرَ ٱلنَّاسِ لَا يَعْلَمُونَ ٣٠

31. ಅಲ್ಲಾಹನ ಕಡೆಗೆ ತಿರುಗಿ ಅವನನ್ನು ಭಯಪಡಿರಿ ಮತ್ತು ನಮಾಝ್ ಸಂಸ್ಥಾಪಿಸಿರಿ. ಬಹುದೇವಾರಾಧಕರಲ್ಲಿ ಸೇರಬೇಡಿ.

مُنِيبِينَ إِلَيْهِ وَٱتَّقُوهُ وَأَقِيمُوا۟ ٱلصَّلَوٰةَ وَلَا تَكُونُوا۟ مِنَ ٱلْمُشْرِكِينَ ٣١

32. ಅಂದರೆ, ತಮ್ಮ ಧರ್ಮವನ್ನು ಒಡೆದು ಹಲವಾರು ಪಂಗಡಗಳಾಗಿ

مِنَ ٱلَّذِينَ فَرَّقُوا۟ دِينَهُمْ وَكَانُوا۟ شِيَعًا ۖ كُلُّ حِزْبٍۭ

ಬಿಟ್ಟವರು. ಪ್ರತಿಯೊಂದು ಪಂಗಡವೂ ಅದರ ಕೈಯಲ್ಲಿ ಏನಿದೆಯೋ ಅದರಲ್ಲಿ ಸಂಭ್ರಮಿಸುತ್ತಿದೆ.

بِمَا لَدَيۡهِمۡ فَرِحُونَ ٣٢

33. ಜನರಿಗೆ ಏನಾದರೂ ತೊಂದರೆಯುಂಟಾದರೆ, ಅವರು ತಮ್ಮ ಪರಿಪಾಲಕನ (ಅಲ್ಲಾಹನ) ಕಡೆಗೆ ಸಂಪೂರ್ಣವಾಗಿ ತಿರುಗಿ ಅವನನ್ನು ಕರೆದು ಪ್ರಾರ್ಥಿಸುತ್ತಾರೆ. ನಂತರ ಅಲ್ಲಾಹು ಅವರಿಗೆ ತನ್ನ ದಯೆಯ ರುಚಿಯನ್ನು ತೋರಿಸಿದರೆ, ಅವರಲ್ಲೊಂದು ಗುಂಪು ತಮ್ಮ ಪರಿಪಾಲಕನೊಂದಿಗೆ (ಅಲ್ಲಾಹನೊಂದಿಗೆ) ಸಹಭಾಗಿತ್ವ (ಶಿರ್ಕ್) ಮಾಡುತ್ತಾರೆ.

وَإِذَا مَسَّ ٱلنَّاسَ ضُرّٞ دَعَوۡاْ رَبَّهُم مُّنِيبِينَ إِلَيۡهِ ثُمَّ إِذَآ أَذَاقَهُم مِّنۡهُ رَحۡمَةً إِذَا فَرِيقٞ مِّنۡهُم بِرَبِّهِمۡ يُشۡرِكُونَ ٣٣

34. ನಾವು ಅವರಿಗೆ ದಯಪಾಲಿಸಿದ ಅನುಗ್ರಹಗಳಿಗೆ ಕೃತಘ್ನತೆ ತೋರಲೆಂದು! ಸರಿ, ನೀವು ಆನಂದಿಸಿ. ಸದ್ಯವೇ ನಿಮಗೆ ತಿಳಿಯಲಿದೆ.

لِيَكۡفُرُواْ بِمَآ ءَاتَيۡنَٰهُمۡۚ فَتَمَتَّعُواْ فَسَوۡفَ تَعۡلَمُونَ ٣٤

35. ನಾವು ಅವರಿಗೆ ಏನಾದರೂ ಸಾಕ್ಷ್ಯಾಧಾರವನ್ನು ಅವತೀರ್ಣಗೊಳಿಸಿದ್ದು, ಅದು ಅವರು ಮಾಡುತ್ತಿರುವ ಸಹಭಾಗಿತ್ವದ (ಶಿರ್ಕ್) ಬಗ್ಗೆ ಮಾತನಾಡುತ್ತದೆಯೇ?

أَمۡ أَنزَلۡنَا عَلَيۡهِمۡ سُلۡطَٰنٗا فَهُوَ يَتَكَلَّمُ بِمَا كَانُواْ بِهِۦ يُشۡرِكُونَ ٣٥

36. ನಾವು ಮನುಷ್ಯರಿಗೆ ದಯೆಯ ರುಚಿಯನ್ನು ತೋರಿಸಿದರೆ ಅವರು ಸಂತೋಷಪಡುತ್ತಾರೆ. ಆದರೆ, ಅವರ ಕೈಗಳು ಮುಂದಕ್ಕೆ ಕಳುಹಿಸಿರುವ ದುಷ್ಕರ್ಮಗಳ ಕಾರಣದಿಂದ ಅವರಿಗೇನಾದರೂ ಅನಾಹುತ ಸಂಭವಿಸಿದರೆ ಅಗೋ! ಅವರು ಹತಾಶರಾಗಿ ಬಿಡುತ್ತಾರೆ.

وَإِذَآ أَذَقۡنَا ٱلنَّاسَ رَحۡمَةٗ فَرِحُواْ بِهَاۖ وَإِن تُصِبۡهُمۡ سَيِّئَةُۢ بِمَا قَدَّمَتۡ أَيۡدِيهِمۡ إِذَا هُمۡ يَقۡنَطُونَ ٣٦

37. ಅಲ್ಲಾಹು ಅವನು ಇಚ್ಛಿಸುವವರಿಗೆ ಉಪಜೀವನವನ್ನು ವಿಶಾಲಗೊಳಿಸುತ್ತಾನೆ ಮತ್ತು ಅವನು ಇಚ್ಛಿಸುವವರಿಗೆ ಇಕ್ಕಟ್ಟುಗೊಳಿಸುತ್ತಾನೆಂದು ಅವರು ನೋಡಿಲ್ಲವೇ?ನಿಶ್ಚಯವಾಗಿಯೂ ವಿಶ್ವಾಸವಿಡುವ ಜನರಿಗೆ ಅದರಲ್ಲಿ ದೃಷ್ಟಾಂತಗಳಿವೆ.

أَوَلَمۡ يَرَوۡاْ أَنَّ ٱللَّهَ يَبۡسُطُ ٱلرِّزۡقَ لِمَن يَشَآءُ وَيَقۡدِرُۚ إِنَّ فِي ذَٰلِكَ لَأٓيَٰتٖ لِّقَوۡمٖ يُؤۡمِنُونَ ٣٧

38. ಆದ್ದರಿಂದ ನೀವು ಕುಟುಂಬ ಸಂಬಂಧಿಕರಿಗೆ ಅವರ ಹಕ್ಕನ್ನು ನೀಡಿರಿ. ಬಡವರಿಗೂ, ಪ್ರಯಾಣಿಕರಿಗೂ (ಅವರ ಹಕ್ಕನ್ನು ನೀಡಿರಿ). ಅಲ್ಲಾಹನ ಮುಖವನ್ನು ಬಯಸುವವರಿಗೆ ಅದು ಉತ್ತಮವಾಗಿದೆ. ಅವರೇ ಯಶಸ್ವಿಯಾದವರು.

فَـَٔاتِ ذَا ٱلۡقُرۡبَىٰ حَقَّهُۥ وَٱلۡمِسۡكِينَ وَٱبۡنَ ٱلسَّبِيلِۚ ذَٰلِكَ خَيۡرٞ لِّلَّذِينَ يُرِيدُونَ وَجۡهَ ٱللَّهِۖ وَأُوْلَٰٓئِكَ هُمُ ٱلۡمُفۡلِحُونَ ٣٨

39. ಜನರ ಧನದಲ್ಲಿ ಹೆಚ್ಚಾಗುತ್ತಾ ಇರಲು ನೀವು ಏನನ್ನು ಬಡ್ಡಿಗೆ ನೀಡುತ್ತೀರೋ ಅದು ಅಲ್ಲಾಹನ ಬಳಿ ಹೆಚ್ಚಾಗುವುದಿಲ್ಲ. ಆದರೆ ನೀವು ಅಲ್ಲಾಹನ ಮುಖವನ್ನು ಬಯಸಿ ನೀಡುವ ಝಕಾತ್—ಅವರೇ ಇಮ್ಮಡಿ ಪ್ರತಿಫಲವನ್ನು ಪಡೆಯುವವರು.

وَمَآ ءَاتَيۡتُم مِّن رِّبٗا لِّيَرۡبُوَاْ فِيٓ أَمۡوَٰلِ ٱلنَّاسِ فَلَا يَرۡبُواْ عِندَ ٱللَّهِۖ وَمَآ ءَاتَيۡتُم مِّن زَكَوٰةٖ تُرِيدُونَ وَجۡهَ ٱللَّهِ فَأُوْلَٰٓئِكَ هُمُ ٱلۡمُضۡعِفُونَ ٣٩

40. ಅಲ್ಲಾಹನೇ ನಿಮ್ಮನ್ನು ಸೃಷ್ಟಿಸಿದವನು. ನಂತರ ಅವನು ನಿಮಗೆ ಉಪಜೀವನವನ್ನು ಒದಗಿಸಿದನು. ನಂತರ ಅವನು ನಿಮ್ಮನ್ನು ಮೃತಪಡಿಸುತ್ತಾನೆ. ನಂತರ ಪುನಃ ನಿಮಗೆ ಜೀವವನ್ನು ನೀಡುತ್ತಾನೆ. ನೀವು ಅಲ್ಲಾಹನೊಂದಿಗೆ ಸಹಭಾಗಿಗಳಾಗಿ ಮಾಡಿದವರಲ್ಲಿ (ನಿಮ್ಮ ದೇವರುಗಳಲ್ಲಿ) ಯಾರಾದರೂ ಒಬ್ಬರು ಇವುಗಳಲ್ಲಿ ಯಾವುದಾದರೂ ಒಂದನ್ನು ಮಾಡುವರೇ? ಅವರು ಮಾಡುವ ಸಹಭಾಗಿತ್ವದಿಂದ (ಶಿರ್ಕ್‌ನಿಂದ) ಅಲ್ಲಾಹು ಎಷ್ಟೋ ಪರಿಶುದ್ಧನು ಮತ್ತು ಪರಮೋನ್ನತನಾಗಿದ್ದಾನೆ.

ٱللَّهُ ٱلَّذِى خَلَقَكُمْ ثُمَّ رَزَقَكُمْ ثُمَّ يُمِيتُكُمْ ثُمَّ يُحْيِيكُمْ ۖ هَلْ مِن شُرَكَآئِكُم مَّن يَفْعَلُ مِن ذَٰلِكُم مِّن شَىْءٍ ۚ سُبْحَٰنَهُۥ وَتَعَٰلَىٰ عَمَّا يُشْرِكُونَ ﴿٤٠﴾

41. ಮನುಷ್ಯರು ಮಾಡಿದ ದುಷ್ಕರ್ಮಗಳ ಕಾರಣದಿಂದ ನೆಲದಲ್ಲೂ, ಕಡಲಲ್ಲೂ ವಿನಾಶವು ಹರಡಿಕೊಂಡಿದೆ. ಅವರು ಮಾಡಿದ ಕೆಲವು ಕರ್ಮಗಳ ರುಚಿಯನ್ನು ಅವರಿಗೆ ತೋರಿಸಲೆಂದು. ಅವರು (ಸತ್ಯಮಾರ್ಗಕ್ಕೆ) ಮರಳಿ ಬರುವುದಕ್ಕಾಗಿ.

ظَهَرَ ٱلْفَسَادُ فِى ٱلْبَرِّ وَٱلْبَحْرِ بِمَا كَسَبَتْ أَيْدِى ٱلنَّاسِ لِيُذِيقَهُم بَعْضَ ٱلَّذِى عَمِلُوا۟ لَعَلَّهُمْ يَرْجِعُونَ ﴿٤١﴾

42. ಹೇಳಿರಿ: "ನೀವು ಭೂಮಿಯಲ್ಲಿ ಸಂಚರಿಸಿ ಹಿಂದಿನ ಕಾಲದ ಜನರ ಅಂತ್ಯವು ಹೇಗಿತ್ತೆಂದು ನೋಡಿರಿ. ಅವರಲ್ಲಿ ಹೆಚ್ಚಿನವರು ಬಹುದೇವಾರಾಧಕರಾಗಿದ್ದರು."

قُلْ سِيرُوا۟ فِى ٱلْأَرْضِ فَٱنظُرُوا۟ كَيْفَ كَانَ عَٰقِبَةُ ٱلَّذِينَ مِن قَبْلُ ۚ كَانَ أَكْثَرُهُم مُّشْرِكِينَ ﴿٤٢﴾

43. ಯಾರಿಗೂ ತಡೆಯೊಡ್ಡಲು ಸಾಧ್ಯವಾಗದ ಒಂದು ದಿನ ಬರುವುದಕ್ಕೆ ಮೊದಲು ನೀವು ನಿಮ್ಮ ಮುಖವನ್ನು ನೇರವಾದ ಧರ್ಮದ ಕಡೆಗೆ ತಿರುಗಿಸಿರಿ. ಅಂದು ಎಲ್ಲರೂ ಬೇರೆ ಬೇರೆಯಾಗಿ ಬಿಡುವರು.

فَأَقِمْ وَجْهَكَ لِلدِّينِ ٱلْقَيِّمِ مِن قَبْلِ أَن يَأْتِىَ يَوْمٌ لَّا مَرَدَّ لَهُۥ مِنَ ٱللَّهِ ۖ يَوْمَئِذٍ يَصَّدَّعُونَ ﴿٤٣﴾

44. ಯಾರು ಸತ್ಯವನ್ನು ನಿಷೇಧಿಸುತ್ತಾರೋ ಅವರ ಸತ್ಯನಿಷೇಧವು ಅವರಿಗೇ ಕೇಡುಕಾಗಿದೆ. ಯಾರು ಸತ್ಕರ್ಮವೆಸಗುತ್ತಾರೋ ಅವರು ಸ್ವಯಂ ಅವರಿಗೇ ವಾಸ್ತವ್ಯಗಳನ್ನು ಸಿದ್ಧಗೊಳಿಸುತ್ತಿದ್ದಾರೆ.

مَن كَفَرَ فَعَلَيْهِ كُفْرُهُۥ ۖ وَمَنْ عَمِلَ صَٰلِحًا فَلِأَنفُسِهِمْ يَمْهَدُونَ ﴿٤٤﴾

45. ಅಲ್ಲಾಹು ತನ್ನ ಔದಾರ್ಯದಿಂದ ಸತ್ಯವಿಶ್ವಾಸಿಗಳಿಗೆ ಮತ್ತು ಸತ್ಕರ್ಮವೆಸಗಿದವರಿಗೆ ಪ್ರತಿಫಲವನ್ನು ನೀಡಲೆಂದು. ಅವನು ಸತ್ಯನಿಷೇಧಿಗಳನ್ನು ಎಂದಿಗೂ ಇಷ್ಟಪಡುವುದಿಲ್ಲ.

لِيَجْزِىَ ٱلَّذِينَ ءَامَنُوا۟ وَعَمِلُوا۟ ٱلصَّٰلِحَٰتِ مِن فَضْلِهِۦٓ ۚ إِنَّهُۥ لَا يُحِبُّ ٱلْكَٰفِرِينَ ﴿٤٥﴾

46. ನಿಮಗೆ ಮಳೆಯ ಬಗ್ಗೆ ಸಿಹಿ ಸುದ್ದಿ ನೀಡಲು, ಅವನ ದಯೆಯ ರುಚಿಯನ್ನು ನಿಮಗೆ ತೋರಿಸಲು, ನಾವೆಗಳು ಅವನ ಆಜ್ಞೆಯಂತೆ (ಸಮುದ್ರದಲ್ಲಿ) ಚಲಿಸಲು ಮತ್ತು ಅವನ ಔದಾರ್ಯದಿಂದ ನೀವು ಉಪಜೀವನವನ್ನು ಹುಡುಕಲು ಅವನು ಗಾಳಿಗಳನ್ನು ಕಳುಹಿಸುವುದು ಅವನ ದೃಷ್ಟಾಂತಗಳಲ್ಲಿ ಒಂದಾಗಿದೆ. ನೀವು ಕೃತಜ್ಞರಾಗುವುದಕ್ಕಾಗಿ.

وَمِنْ ءَايَٰتِهِۦٓ أَن يُرْسِلَ ٱلرِّيَاحَ مُبَشِّرَٰتٍ وَلِيُذِيقَكُم مِّن رَّحْمَتِهِۦ وَلِتَجْرِىَ ٱلْفُلْكُ بِأَمْرِهِۦ وَلِتَبْتَغُوا۟ مِن فَضْلِهِۦ وَلَعَلَّكُمْ تَشْكُرُونَ ﴿٤٦﴾

47. ನಾವು ನಿಮಗಿಂತ ಮೊದಲು ಅನೇಕ ಪ್ರವಾದಿಗಳನ್ನು ಅವರ ಜನರ ಬಳಿಗೆ ಕಳುಹಿಸಿದ್ದೇವೆ. ಅವರು ಸ್ಪಷ್ಟ ಸಾಕ್ಷ್ಯಾಧಾರಗಳೊಂದಿಗೆ ಅವರ ಬಳಿಗೆ ಬಂದರು. ಆಗ ನಾವು ಅಪರಾಧವೆಸಗಿದ ಜನರಿಂದ ಪ್ರತೀಕಾರ ಪಡೆದೆವು. ಸತ್ಯವಿಶ್ವಾಸಿಗಳಿಗೆ ಸಹಾಯ ಮಾಡುವುದು ನಮ್ಮ ಕರ್ತವ್ಯವಾಗಿದೆ.

وَلَقَدْ أَرْسَلْنَا مِن قَبْلِكَ رُسُلًا إِلَىٰ قَوْمِهِمْ فَجَآءُوهُم بِٱلْبَيِّنَٰتِ فَٱنتَقَمْنَا مِنَ ٱلَّذِينَ أَجْرَمُوا۟ ۖ وَكَانَ حَقًّا عَلَيْنَا نَصْرُ ٱلْمُؤْمِنِينَ ﴿٤٧﴾

48. ಅಲ್ಲಾಹು ಗಾಳಿಗಳನ್ನು ಕಳುಹಿಸುತ್ತಾನೆ. ಅವು ಮೋಡಗಳನ್ನು ಎತ್ತಿಕೊಳ್ಳುತ್ತವೆ. ನಂತರ ಅಲ್ಲಾಹು ಅವನು ಇಚ್ಛಿಸುವಂತೆ ಅದನ್ನು ಆಕಾಶದಲ್ಲಿ ಹರಡುತ್ತಾನೆ. ನಂತರ ಅದನ್ನು ತುಣುಕುಗಳನ್ನಾಗಿ ಮಾಡುತ್ತಾನೆ. ಆಗ ಅದರ ಎಡೆಯಿಂದ ಮಳೆಹನಿಗಳು ಹೊರಬರುವುದನ್ನು ನೀವು ಕಾಣುತ್ತೀರಿ. ಅವನು ತನ್ನ ದಾಸರಲ್ಲಿ ಅವನು ಇಚ್ಛಿಸುವವರ ಮೇಲೆ ಅದನ್ನು ಸುರಿಸಿದಾಗ ಅಗೋ! ಅವರು ಸಂತೋಷಪಡುತ್ತಾರೆ.

ٱللَّهُ ٱلَّذِى يُرْسِلُ ٱلرِّيَٰحَ فَتُثِيرُ سَحَابًا فَيَبْسُطُهُۥ فِى ٱلسَّمَآءِ كَيْفَ يَشَآءُ وَيَجْعَلُهُۥ كِسَفًا فَتَرَى ٱلْوَدْقَ يَخْرُجُ مِنْ خِلَٰلِهِۦ ۖ فَإِذَآ أَصَابَ بِهِۦ مَن يَشَآءُ مِنْ عِبَادِهِۦٓ إِذَا هُمْ يَسْتَبْشِرُونَ ﴿٤٨﴾

49. ಆ ಮಳೆಯು ಅವರ ಮೇಲೆ ಸುರಿಯುವುದಕ್ಕೆ ಮೊದಲು ಖಂಡಿತವಾಗಿಯೂ ಅವರು ನಿರಾಶರಾಗಿದ್ದರು.

وَإِن كَانُوا۟ مِن قَبْلِ أَن يُنَزَّلَ عَلَيْهِم مِّن قَبْلِهِۦ لَمُبْلِسِينَ ﴿٤٩﴾

50. ಅಲ್ಲಾಹನ ದಯೆಯ ಪರಿಣಾಮಗಳನ್ನು ನೋಡಿರಿ. ಭೂಮಿಯು ನಿರ್ಜೀವವಾದ ಬಳಿಕ ಅವನು ಅದಕ್ಕೆ ಹೇಗೆ ಜೀವ ನೀಡುತ್ತಾನೆಂದು. ಅಂತಹವನು ಸತ್ತವರಿಗೆ ಜೀವ ನೀಡುತ್ತಾನೆ ಎಂಬುದರಲ್ಲಿ ಸಂಶಯವೇ ಇಲ್ಲ. ಅವನು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

فَٱنظُرْ إِلَىٰٓ ءَاثَٰرِ رَحْمَتِ ٱللَّهِ كَيْفَ يُحْىِ ٱلْأَرْضَ بَعْدَ مَوْتِهَآ ۚ إِنَّ ذَٰلِكَ لَمُحْىِ ٱلْمَوْتَىٰ ۖ وَهُوَ عَلَىٰ كُلِّ شَىْءٍ قَدِيرٌ ﴿٥٠﴾

51. ನಾವು ಬಿರುಗಾಳಿಯನ್ನು ಕಳುಹಿಸಿ ಅದು ಅವರ ಹೊಲಗಳನ್ನು ಹಳದಿ ಬಣ್ಣಕ್ಕೆ ತಿರುಗಿಸುವುದನ್ನು (ಬಾಡಿಸುವುದನ್ನು) ಕಂಡರೂ ಅವರು ಅದರ ಬಳಿಕವೂ ಕೃತಘ್ನರಾಗಿಯೇ ಇರುವರು.

وَلَئِنْ أَرْسَلْنَا رِيحًا فَرَأَوْهُ مُصْفَرًّا لَّظَلُّوا۟ مِنۢ بَعْدِهِۦ يَكْفُرُونَ ﴿٥١﴾

52. ಸತ್ತವರಿಗೆ ಕೇಳುವಂತೆ ಮಾಡಲು ನಿಮಗೆ ಖಂಡಿತ ಸಾಧ್ಯವಿಲ್ಲ. ಕಿವುಡರು ಬೆನ್ನು ತಿರುಗಿಸಿ ನಡೆದರೆ ಅವರಿಗೆ ಕರೆ ಕೇಳುವಂತೆ ಮಾಡಲು ಕೂಡ ನಿಮಗೆ ಸಾಧ್ಯವಿಲ್ಲ.

فَإِنَّكَ لَا تُسْمِعُ ٱلْمَوْتَىٰ وَلَا تُسْمِعُ ٱلصُّمَّ ٱلدُّعَآءَ إِذَا وَلَّوْا۟ مُدْبِرِينَ ﴿٥٢﴾

53. ಕುರುಡರನ್ನು ಅವರ ದುರ್ಮಾರ್ಗದಿಂದ ಮುಕ್ತಗೊಳಿಸಿ ಸನ್ಮಾರ್ಗಕ್ಕೆ ದಾರಿ ತೋರಿಸಲು ನಿಮಗೆ ಸಾಧ್ಯವಿಲ್ಲ. ನಮ್ಮ ವಚನಗಳಲ್ಲಿ ವಿಶ್ವಾಸವಿಟ್ಟು ನಂತರ ಶರಣಾಗುವವರು ಯಾರೋ ಅವರಿಗೆ ಮಾತ್ರ ನೀವು ಕೇಳುವಂತೆ ಮಾಡಬಲ್ಲಿರಿ.

وَمَآ أَنتَ بِهَٰدِ ٱلْعُمْىِ عَن ضَلَٰلَتِهِمْ ۖ إِن تُسْمِعُ إِلَّا مَن يُؤْمِنُ بِـَٔايَٰتِنَا فَهُم مُّسْلِمُونَ ﴿٥٣﴾

54. ಅಲ್ಲಾಹು ನಿಮ್ಮನ್ನು ದುರ್ಬಲ ಸ್ಥಿತಿಯಲ್ಲಿ ಸೃಷ್ಟಿಸಿದನು. ನಂತರ ದೌರ್ಬಲ್ಯದ ಬಳಿಕ ಅವನು ನಿಮಗೆ ಶಕ್ತಿಯನ್ನು ನೀಡಿದನು.

ٱللَّهُ ٱلَّذِى خَلَقَكُم مِّن ضَعْفٍ ثُمَّ جَعَلَ مِنۢ بَعْدِ ضَعْفٍ قُوَّةً ثُمَّ جَعَلَ مِنۢ بَعْدِ قُوَّةٍ ضَعْفًا

وَشَيۡبَةٗۚ يَخۡلُقُ مَا يَشَآءُۚ وَهُوَ ٱلۡعَلِيمُ ٱلۡقَدِيرُ ٥٤

ನಂತರ ಶಕ್ತಿಯನ್ನು ನೀಡಿದ ಬಳಿಕ ಅವನು ನಿಮ್ಮನ್ನು ಪುನಃ ದುರ್ಬಲರಾಗಿ ಮತ್ತು ಕೂದಲು ನೆರೆತವರಾಗಿ ಮಾಡಿದನು. ಅವನು ಇಚ್ಛಿಸುವುದನ್ನು ಅವನು ಸೃಷ್ಟಿಸುತ್ತಾನೆ. ಅವನು ಸರ್ವಜ್ಞನು ಮತ್ತು ಸರ್ವಶಕ್ತನಾಗಿದ್ದಾನೆ.

---

وَيَوۡمَ تَقُومُ ٱلسَّاعَةُ يُقۡسِمُ ٱلۡمُجۡرِمُونَ مَا لَبِثُواْ غَيۡرَ سَاعَةٖۚ كَذَٰلِكَ كَانُواْ يُؤۡفَكُونَ ٥٥

55. ಅಂತ್ಯಸಮಯವು ಸಂಭವಿಸುವ ದಿನದಂದು ಅಪರಾಧಿಗಳು ಆಣೆ ಮಾಡುತ್ತಾ, "ನಾವು (ಇಹಲೋಕದಲ್ಲಿ) ಒಂದು ತಾಸಿಗಿಂತ ಹೆಚ್ಚು ವಾಸವಾಗಿರಲಿಲ್ಲ" ಎಂದು ಹೇಳುವರು. ಈ ರೀತಿ ಅವರನ್ನು (ಸತ್ಯದಿಂದ) ತಪ್ಪಿಸಿಬಿಡಲಾಗಿದೆ.

---

وَقَالَ ٱلَّذِينَ أُوتُواْ ٱلۡعِلۡمَ وَٱلۡإِيمَٰنَ لَقَدۡ لَبِثۡتُمۡ فِي كِتَٰبِ ٱللَّهِ إِلَىٰ يَوۡمِ ٱلۡبَعۡثِۖ فَهَٰذَا يَوۡمُ ٱلۡبَعۡثِ وَلَٰكِنَّكُمۡ كُنتُمۡ لَا تَعۡلَمُونَ ٥٦

56. ಜ್ಞಾನ ಮತ್ತು ವಿಶ್ವಾಸವನ್ನು ನೀಡಲಾದವರು ಹೇಳುವರು: "ನೀವು ಅಲ್ಲಾಹನ ದಾಖಲೆಯಲ್ಲಿರುವಂತೆ ಪುನರುತ್ಥಾನ ದಿನದವರೆಗೆ ವಾಸವಾಗಿದ್ದಿರಿ. ಇಗೋ ಇದೇ ಪುನರುತ್ಥಾನದ ದಿನ! ಆದರೆ ನಿಮಗೆ ಅದು ತಿಳಿದಿಲ್ಲ."

---

فَيَوۡمَئِذٖ لَّا يَنفَعُ ٱلَّذِينَ ظَلَمُواْ مَعۡذِرَتُهُمۡ وَلَا هُمۡ يُسۡتَعۡتَبُونَ ٥٧

57. ಅಕ್ರಮಿಗಳಿಗೆ ಆ ದಿನ ಅವರ ನೆಪಗಳು ಯಾವುದೇ ಉಪಕಾರ ಮಾಡುವುದಿಲ್ಲ. ಅವರೊಡನೆ ಪಶ್ಚಾತ್ತಾಪಪಡುವಂತೆಯೂ ಕೇಳಿಕೊಳ್ಳಲಾಗುವುದಿಲ್ಲ.

---

وَلَقَدۡ ضَرَبۡنَا لِلنَّاسِ فِي هَٰذَا ٱلۡقُرۡءَانِ مِن كُلِّ مَثَلٖۚ وَلَئِن جِئۡتَهُم بِـَٔايَةٖ لَّيَقُولَنَّ ٱلَّذِينَ كَفَرُوٓاْ إِنۡ أَنتُمۡ إِلَّا مُبۡطِلُونَ ٥٨

58. ನಾವು ಈ ಕುರ್‌ಆನ್‌ನಲ್ಲಿ ಜನರಿಗೋಸ್ಕರ ಎಲ್ಲ ರೀತಿಯ ಉದಾಹರಣೆಗಳನ್ನು ವಿವರಿಸಿದ್ದೇವೆ. ನೀವು ಒಂದು ದೃಷ್ಟಾಂತದೊಂದಿಗೆ ಅವರ ಬಳಿ ತೆರಳಿದರೂ ಸತ್ಯನಿಷೇಧಿಗಳು ಹೇಳುವರು: "ನೀವು ಖಂಡಿತವಾಗಿಯೂ ಮಿಥ್ಯವಾದಿಗಳಾಗಿದ್ದೀರಿ."

---

كَذَٰلِكَ يَطۡبَعُ ٱللَّهُ عَلَىٰ قُلُوبِ ٱلَّذِينَ لَا يَعۡلَمُونَ ٥٩

59. ಈ ರೀತಿ ಅಲ್ಲಾಹು (ಸತ್ಯವನ್ನು) ಅರ್ಥಮಾಡಿಕೊಳ್ಳಲು ಮುಂದಾಗದವರ ಹೃದಯಗಳಿಗೆ ಮೊಹರು ಹಾಕುವನು.

---

فَٱصۡبِرۡ إِنَّ وَعۡدَ ٱللَّهِ حَقّٞۖ وَلَا يَسۡتَخِفَّنَّكَ ٱلَّذِينَ لَا يُوقِنُونَ ٦٠

60. ನೀವು ತಾಳ್ಮೆಯಿಂದಿರಿ. ನಿಶ್ಚಯವಾಗಿಯೂ ಅಲ್ಲಾಹನ ವಾಗ್ದಾನವು ಸತ್ಯವಾಗಿದೆ. ದೃಢವಿಶ್ವಾಸವಿಲ್ಲದ ಆ ಜನರು ನಿಮ್ಮನ್ನು ತಾಳ್ಮೆಗೆಡುವಂತೆ ಮಾಡದಿರಲಿ.

# 31. ಲುಕ್ಮಾನ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسْمِ ٱللَّهِ ٱلرَّحْمَٰنِ ٱلرَّحِيمِ

1. ಅಲಿಫ್-ಲಾಮ್-ಮೀಮ್.

الٓمٓ ١

2. ಇವು ವಿವೇಕಪೂರ್ಣ ಗ್ರಂಥದ ವಚನಗಳಾಗಿವೆ.

تِلْكَ ءَايَٰتُ ٱلْكِتَٰبِ ٱلْحَكِيمِ ٢

3. ಇದು ಒಳಿತು ಮಾಡುವವರಿಗೆ ಮಾರ್ಗದರ್ಶಿ ಮತ್ತು ದಯೆಯಾಗಿದೆ.

هُدًى وَرَحْمَةً لِّلْمُحْسِنِينَ ٣

4. ಅವರು (ಒಳಿತು ಮಾಡುವವರು) ಯಾರೆಂದರೆ ನಮಾಝನ್ನು ಸಂಸ್ಥಾಪಿಸುವವರು, ಝಕಾತ್ ನೀಡುವವರು ಮತ್ತು ಪರಲೋಕದಲ್ಲಿ ದೃಢವಿಶ್ವಾಸವಿಡುವವರು.

ٱلَّذِينَ يُقِيمُونَ ٱلصَّلَوٰةَ وَيُؤْتُونَ ٱلزَّكَوٰةَ وَهُم بِٱلْءَاخِرَةِ هُمْ يُوقِنُونَ ٤

5. ಅವರು ಅವರ ಪರಿಪಾಲಕನ (ಅಲ್ಲಾಹನ) ಕಡೆಯ ಸನ್ಮಾರ್ಗದ-ಲ್ಲಿದ್ದಾರೆ. ಅವರೇ ಯಶಸ್ವಿಯಾದವರು.

أُو۟لَٰٓئِكَ عَلَىٰ هُدًى مِّن رَّبِّهِمْ ۖ وَأُو۟لَٰٓئِكَ هُمُ ٱلْمُفْلِحُونَ ٥

6. ಜನರಲ್ಲಿ ಕೆಲವರಿದ್ದಾರೆ. ಅವರು ಯಾವುದೇ ತಿಳುವಳಿಕೆಯಿಲ್ಲದೆ ಅಲ್ಲಾಹನ ಮಾರ್ಗದಿಂದ ಜನರನ್ನು ತಪ್ಪಿಸಲು ಮತ್ತು ಅದನ್ನು ತಮಾಷೆಯ ವಸ್ತುವನ್ನಾಗಿ ಸ್ವೀಕರಿಸಲು ಮೋಜಿನ ಮಾತುಗಳನ್ನು ಖರೀದಿಸಿ ತರುತ್ತಾರೆ. ಅವರಿಗೆ ಅವಮಾನಕರ ಶಿಕ್ಷೆಯಿದೆ.

وَمِنَ ٱلنَّاسِ مَن يَشْتَرِى لَهْوَ ٱلْحَدِيثِ لِيُضِلَّ عَن سَبِيلِ ٱللَّهِ بِغَيْرِ عِلْمٍ وَيَتَّخِذَهَا هُزُوًا ۚ أُو۟لَٰٓئِكَ لَهُمْ عَذَابٌ مُّهِينٌ ٦

7. ಅವನಿಗೆ ನಮ್ಮ ವಚನಗಳನ್ನು ಓದಿ ಕೊಡಲಾದರೆ ಅವನು ಬೆನ್ನು ತೋರಿಸಿ ಅಹಂಕಾರದಿಂದ ನಡೆಯುತ್ತಾನೆ. ಅವನು ಅದನ್ನು ಕೇಳಿಯೇ ಇಲ್ಲ ಎಂಬಂತೆ. ಅವನ ಕಿವಿಗಳಲ್ಲಿ ಮುಚ್ಚಳವಿರುವಂತೆ. ಅವನಿಗೆ ಯಾತನಾಮಯ ಶಿಕ್ಷೆಯ ಬಗ್ಗೆ ಸುವಾರ್ತೆಯನ್ನು ನೀಡಿರಿ.

وَإِذَا تُتْلَىٰ عَلَيْهِ ءَايَٰتُنَا وَلَّىٰ مُسْتَكْبِرًا كَأَن لَّمْ يَسْمَعْهَا كَأَنَّ فِىٓ أُذُنَيْهِ وَقْرًا ۖ فَبَشِّرْهُ بِعَذَابٍ أَلِيمٍ ٧

8. ನಿಶ್ಚಯವಾಗಿಯೂ ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ ಅವರಿಗೆ ಸುಖಸಮೃದ್ಧವಾದ ಸ್ವರ್ಗೋದ್ಯಾನಗಳಿವೆ.

إِنَّ ٱلَّذِينَ ءَامَنُوا۟ وَعَمِلُوا۟ ٱلصَّٰلِحَٰتِ لَهُمْ جَنَّٰتُ ٱلنَّعِيمِ ٨

9. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅದು ಅಲ್ಲಾಹನ ಸತ್ಯ ವಾಗ್ದಾನವಾಗಿದೆ. ಅವನು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

خَٰلِدِينَ فِيهَا ۖ وَعْدَ ٱللَّهِ حَقًّا ۚ وَهُوَ ٱلْعَزِيزُ ٱلْحَكِيمُ ٩

10. ನೀವು ನೋಡುವ ಯಾವುದೇ ಸ್ಥಂಭಗಳ ಆಧಾರವಿಲ್ಲದೆ ಅವನು ಆಕಾಶಗಳನ್ನು ಸೃಷ್ಟಿಸಿದ್ದಾನೆ. ಭೂಮಿಯು ನಿಮ್ಮೊಂದಿಗೆ ಅಲುಗಾಡದಿರಲು ಅವನು ಅದರಲ್ಲಿ ದೃಢವಾಗಿ ನಿಲ್ಲುವ ಪರ್ವತಗಳನ್ನು ಸ್ಥಾಪಿಸಿದ್ದಾನೆ. ಅವನು ಅದರಲ್ಲಿ ಎಲ್ಲಾ

خَلَقَ ٱلسَّمَٰوَٰتِ بِغَيْرِ عَمَدٍ تَرَوْنَهَا ۖ وَأَلْقَىٰ فِى ٱلْأَرْضِ رَوَٰسِىَ أَن تَمِيدَ بِكُمْ وَبَثَّ فِيهَا مِن كُلِّ دَآبَّةٍ ۚ وَأَنزَلْنَا مِنَ ٱلسَّمَآءِ مَآءً فَأَنۢبَتْنَا فِيهَا

مِن كُلِّ زَوۡجٖ كَرِيمٍ ١٠

ರೀತಿಯ ಜೀವರಾಶಿಗಳನ್ನು ಹಬ್ಬಿಸಿದ್ದಾನೆ. ನಾವು ಆಕಾಶದಿಂದ ಮಳೆಯನ್ನು ಸುರಿಸಿದೆವು. ನಂತರ ಅದರಲ್ಲಿ ಎಲ್ಲಾ ವಿಧಗಳ ಉತ್ತಮ ಸಸ್ಯವರ್ಗಗಳನ್ನು ಬೆಳೆಸಿದೆವು.

---

هَٰذَا خَلۡقُ ٱللَّهِ فَأَرُونِي مَاذَا خَلَقَ ٱلَّذِينَ مِن دُونِهِۦۚ بَلِ ٱلظَّٰلِمُونَ فِي ضَلَٰلٖ مُّبِينٖ ١١

11. ಇವೆಲ್ಲವೂ ಅಲ್ಲಾಹನ ಸೃಷ್ಟಿಗಳು. ಅವನ ಹೊರತಾಗಿ (ನೀವು ಆರಾಧಿಸುವ ದೇವರುಗಳು) ಏನು ಸೃಷ್ಟಿಸಿದ್ದಾರೆಂದು ನನಗೆ ತೋರಿಸಿಕೊಡಿ. ಅಲ್ಲ, ವಾಸ್ತವವಾಗಿ ಅಕ್ರಮಿಗಳು ಸ್ಪಷ್ಟ ದುರ್ಮಾರ್ಗದಲ್ಲಿದ್ದಾರೆ.

---

وَلَقَدۡ ءَاتَيۡنَا لُقۡمَٰنَ ٱلۡحِكۡمَةَ أَنِ ٱشۡكُرۡ لِلَّهِۚ وَمَن يَشۡكُرۡ فَإِنَّمَا يَشۡكُرُ لِنَفۡسِهِۦۖ وَمَن كَفَرَ فَإِنَّ ٱللَّهَ غَنِيٌّ حَمِيدٞ ١٢

12. ನಾವು ಲುಕ್ಮಾನರಿಗೆ[1] ವಿವೇಕವನ್ನು ದಯಪಾಲಿಸಿದೆವು. ನೀವು ಅಲ್ಲಾಹನಿಗೆ ಕೃತಜ್ಞರಾಗಿರಿ ಎಂದು. ಯಾರು ಅಲ್ಲಾಹನಿಗೆ ಕೃತಜ್ಞನಾಗುತ್ತಾನೋ ಅವನು ಕೃತಜ್ಞನಾಗುವುದು ಅವನ ಒಳಿತಿಗೇ ಆಗಿದೆ. ಯಾರಾದರೂ ಕೃತಘ್ನರಾಗುವುದಾದರೆ—ನಿಶ್ಚಯವಾಗಿಯೂ ಅಲ್ಲಾಹು ನಿರಪೇಕ್ಷನು ಮತ್ತು ಸ್ತುತ್ಯರ್ಹನಾಗಿದ್ದಾನೆ.

---

وَإِذۡ قَالَ لُقۡمَٰنُ لِٱبۡنِهِۦ وَهُوَ يَعِظُهُۥ يَٰبُنَيَّ لَا تُشۡرِكۡ بِٱللَّهِۖ إِنَّ ٱلشِّرۡكَ لَظُلۡمٌ عَظِيمٞ ١٣

13. ಲುಕ್ಮಾನ್ ತನ್ನ ಮಗನಿಗೆ ಉಪದೇಶ ಮಾಡುತ್ತಾ ಹೇಳಿದ ಸಂದರ್ಭ: "ಮಗೂ! ಅಲ್ಲಾಹನೊಂದಿಗೆ ಸಹಭಾಗಿತ್ವ (ಶಿರ್ಕ್) ಮಾಡಬೇಡ. ನಿಶ್ಚಯವಾಗಿಯೂ ಸಹಭಾಗಿತ್ವವು (ಶಿರ್ಕ್) ಘೋರ ಅಕ್ರಮವಾಗಿದೆ."

---

وَوَصَّيۡنَا ٱلۡإِنسَٰنَ بِوَٰلِدَيۡهِ حَمَلَتۡهُ أُمُّهُۥ وَهۡنًا عَلَىٰ وَهۡنٖ وَفِصَٰلُهُۥ فِي عَامَيۡنِ أَنِ ٱشۡكُرۡ لِي وَلِوَٰلِدَيۡكَ إِلَيَّ ٱلۡمَصِيرُ ١٤

14. ನಾವು ಮನುಷ್ಯರಿಗೆ ಅವರ ತಂದೆ-ತಾಯಿಗಳ ವಿಷಯದಲ್ಲಿ ಉಪದೇಶ ಮಾಡಿದ್ದೇವೆ. ಅವನ ತಾಯಿ ನಿಶಕ್ತಿಯ ಮೇಲೆ ನಿಶಕ್ತಿ ಸಹಿಸಿ ಅವನನ್ನು ಗರ್ಭದಲ್ಲಿ ಹೊತ್ತುಕೊಂಡಳು. ಅವನ ಸ್ತನಪಾನವನ್ನು ನಿಲ್ಲಿಸಿದ್ದು ಎರಡು ವರ್ಷಗಳಲ್ಲಿ. ನೀನು ನನಗೆ ಮತ್ತು ನಿನ್ನ ತಂದೆ-ತಾಯಿಗೆ ಕೃತಜ್ಞನಾಗಿರು. ನೀನು ಮರಳಿ ಬರುವುದು ನನ್ನ ಬಳಿಗೇ ಆಗಿದೆ.

---

وَإِن جَٰهَدَاكَ عَلَىٰٓ أَن تُشۡرِكَ بِي مَا لَيۡسَ لَكَ بِهِۦ عِلۡمٞ فَلَا تُطِعۡهُمَاۖ وَصَاحِبۡهُمَا فِي ٱلدُّنۡيَا مَعۡرُوفٗاۖ وَٱتَّبِعۡ سَبِيلَ مَنۡ أَنَابَ إِلَيَّۚ ثُمَّ إِلَيَّ مَرۡجِعُكُمۡ فَأُنَبِّئُكُم بِمَا كُنتُمۡ تَعۡمَلُونَ ١٥

15. ಆದರೆ, ನಿನಗೆ ಯಾವುದೇ ತಿಳುವಳಿಕೆಯಿಲ್ಲದ ವಸ್ತುವನ್ನು ನನ್ನೊಂದಿಗೆ ಸಹಭಾಗಿಯನ್ನಾಗಿ ಮಾಡಲು ಅವರು (ತಂದೆ-ತಾಯಿ) ಪರಿಶ್ರಮಿಸಿದರೆ (ಬಲವಂತಪಡಿಸಿದರೆ) ಅವರ ಆಜ್ಞಾಪಾಲನೆ ಮಾಡಬೇಡ. ಇಹಲೋಕದಲ್ಲಿ ಅವರ ಜೊತೆಗೆ ಅತ್ಯುತ್ತಮವಾಗಿ ವರ್ತಿಸು. ನನ್ನ ಕಡೆಗೆ ತಿರುಗಿದವರ ಮಾರ್ಗವನ್ನು ಹಿಂಬಾಲಿಸು. ನಂತರ ನಿಮಗೆ ನನ್ನ ಬಳಿಗೇ ಮರಳಿ ಬರಬೇಕಾಗಿದೆ. ಆಗ ನೀವು ಮಾಡುತ್ತಿದ್ದ ಕರ್ಮಗಳ ಬಗ್ಗೆ ನಾನು ನಿಮಗೆ ತಿಳಿಸಿಕೊಡುವೆನು.

---

[1] ಲುಕ್ಮಾನ್ ಮಹಾಪುರುಷರು ಮತ್ತು ನೀತಿವಂತ ದಾಸರಾಗಿದ್ದರು. ಅಲ್ಲಾಹು ಅವರಿಗೆ ಅಪಾರ ವಿವೇಕ ಮತ್ತು ಬುದ್ಧಿಶಕ್ತಿಯನ್ನು ನೀಡಿ ಆಶೀರ್ವದಿಸಿದ್ದನು.

16. (ಲುಕ್ಮಾನ್ ಹೇಳಿದರು): “ಮಗೂ! ನೀನು ಮಾಡಿದ ಕರ್ಮವು ಒಂದು ಸಾಸಿವೆ ಕಾಳಿನ ಭಾರದಷ್ಟಿದ್ದು, ಅದು ಬಂಡೆಯೊಳಗೆ, ಅಥವಾ ಆಕಾಶಗಳಲ್ಲಿ, ಅಥವಾ ಭೂಮಿಯಲ್ಲಿ ಎಲ್ಲೇ ಇದ್ದರೂ ಅಲ್ಲಾಹು ಅದನ್ನು ತಂದೇ ತರುತ್ತಾನೆ. ನಿಶ್ಚಯವಾಗಿಯೂ ಅಲ್ಲಾಹು ಅತ್ಯಂತ ನುಣುಪಾಗಿರುವವನು ಮತ್ತು ಸೂಕ್ಷ್ಮಜ್ಞಾನಿಯಾಗಿದ್ದಾನೆ.

يَٰبُنَيَّ إِنَّهَآ إِن تَكُ مِثۡقَالَ حَبَّةٖ مِّنۡ خَرۡدَلٖ فَتَكُن فِي صَخۡرَةٍ أَوۡ فِي ٱلسَّمَٰوَٰتِ أَوۡ فِي ٱلۡأَرۡضِ يَأۡتِ بِهَا ٱللَّهُۚ إِنَّ ٱللَّهَ لَطِيفٌ خَبِيرٞ ١٦

17. ಮಗೂ! ನಮಾಝ್ ಸಂಸ್ಥಾಪಿಸು, ಒಳಿತನ್ನು ಆದೇಶಿಸು ಮತ್ತು ಕೆಡುಕನ್ನು ವಿರೋಧಿಸು. ನಿನಗೇನಾದರೂ ಕಷ್ಟ ಬಂದರೆ ತಾಳ್ಮೆಯಿಂದಿರು. ನಿಶ್ಚಯವಾಗಿಯೂ ಅದು ಬಹಳ ಒತ್ತುಕೊಡಲಾದ ವಿಷಯಗಳಲ್ಲಿ ಸೇರಿದ್ದಾಗಿದೆ.

يَٰبُنَيَّ أَقِمِ ٱلصَّلَوٰةَ وَأۡمُرۡ بِٱلۡمَعۡرُوفِ وَٱنۡهَ عَنِ ٱلۡمُنكَرِ وَٱصۡبِرۡ عَلَىٰ مَآ أَصَابَكَۖ إِنَّ ذَٰلِكَ مِنۡ عَزۡمِ ٱلۡأُمُورِ ١٧

18. ಜನರ ಮುಂದೆ ನಿನ್ನ ಕೆನ್ನೆಯನ್ನು (ತಿರಸ್ಕಾರದಿಂದ) ತಿರುಗಿಸಬೇಡ. ಭೂಮಿಯಲ್ಲಿ ದರ್ಪದಿಂದ ನಡೆಯಬೇಡ. ಅಹಂಭಾವಿಗಳು ಮತ್ತು ಬಡಾಯಿಗಳಾದ ಯಾರನ್ನೂ ಅಲ್ಲಾಹು ಇಷ್ಟಪಡುವುದಿಲ್ಲ.

وَلَا تُصَعِّرۡ خَدَّكَ لِلنَّاسِ وَلَا تَمۡشِ فِي ٱلۡأَرۡضِ مَرَحًاۖ إِنَّ ٱللَّهَ لَا يُحِبُّ كُلَّ مُخۡتَالٖ فَخُورٖ ١٨

19. ನೀನು ನಡೆಯುವ ವೇಗವು ಮಿತವಾಗಿರಲಿ ಮತ್ತು ನಿನ್ನ ಧ್ವನಿಯು ತಗ್ಗಿರಲಿ. ನಿಶ್ಚಯವಾಗಿಯೂ ಧ್ವನಿಗಳಲ್ಲಿ ಅತಿಕೆಟ್ಟದು ಕತ್ತೆಯ ಧ್ವನಿಯಾಗಿದೆ.

وَٱقۡصِدۡ فِي مَشۡيِكَ وَٱغۡضُضۡ مِن صَوۡتِكَۚ إِنَّ أَنكَرَ ٱلۡأَصۡوَٰتِ لَصَوۡتُ ٱلۡحَمِيرِ ١٩

20. ಭೂಮ್ಯಾಕಾಶಗಳಲ್ಲಿರುವ ಎಲ್ಲವನ್ನೂ ಅಲ್ಲಾಹು ನಿಮಗೆ ಅಧೀನ-ಗೊಳಿಸಿದ್ದಾನೆಂದು ನೀವು ನೋಡಿಲ್ಲವೇ? ಅವನು ನಿಮಗೆ ಗೋಚರ ಮತ್ತು ಅಗೋಚರವಾದ ಹೇರಳ ಅನುಗ್ರಹಗಳನ್ನು ದಯಪಾಲಿಸಿದ್ದಾನೆ. ಜನರಲ್ಲಿ ಕೆಲವರಿದ್ದಾರೆ. ಅವರು ಯಾವುದೇ ಜ್ಞಾನ, ಮಾರ್ಗದರ್ಶನ ಅಥವಾ ಬೆಳಕು ನೀಡುವ ಗ್ರಂಥದ ಆಧಾರವಿಲ್ಲದೆ ಅಲ್ಲಾಹನ ಬಗ್ಗೆ ತರ್ಕಿಸುತ್ತಾರೆ.

أَلَمۡ تَرَوۡاْ أَنَّ ٱللَّهَ سَخَّرَ لَكُم مَّا فِي ٱلسَّمَٰوَٰتِ وَمَا فِي ٱلۡأَرۡضِ وَأَسۡبَغَ عَلَيۡكُمۡ نِعَمَهُۥ ظَٰهِرَةٗ وَبَاطِنَةٗۗ وَمِنَ ٱلنَّاسِ مَن يُجَٰدِلُ فِي ٱللَّهِ بِغَيۡرِ عِلۡمٖ وَلَا هُدٗى وَلَا كِتَٰبٖ مُّنِيرٖ ٢٠

21. “ಅಲ್ಲಾಹು ಅವತೀರ್ಣಗೊಳಿಸಿದ್ದನ್ನು ಅನುಸರಿಸಿರಿ” ಎಂದು ಅವರೊಡನೆ ಹೇಳಲಾದರೆ, ಅವರು ಹೇಳುತ್ತಾರೆ: “ಇಲ್ಲ, ನಮ್ಮ ಪೂರ್ವಜರು ಯಾವ ಮಾರ್ಗದಲ್ಲಿರುವುದಾಗಿ ನಾವು ಕಂಡಿದ್ದೇವೆಯೋ ಆ ಮಾರ್ಗವನ್ನೇ ನಾವು ಅನುಸರಿಸುತ್ತೇವೆ.” ಶೈತಾನನು ಅವರನ್ನು (ಅವರ ಪೂರ್ವಜರನ್ನು) ಜ್ವಲಿಸುವ ನರಕಕ್ಕೆ ಕರೆಯುತ್ತಿದ್ದರೂ (ಅವರು ಅವರನ್ನೇ ಅನುಸರಿಸುವರೇ?)

وَإِذَا قِيلَ لَهُمُ ٱتَّبِعُواْ مَآ أَنزَلَ ٱللَّهُ قَالُواْ بَلۡ نَتَّبِعُ مَا وَجَدۡنَا عَلَيۡهِ ءَابَآءَنَآۚ أَوَلَوۡ كَانَ ٱلشَّيۡطَٰنُ يَدۡعُوهُمۡ إِلَىٰ عَذَابِ ٱلسَّعِيرِ ٢١

22. ಯಾರು ಒಳಿತು ಮಾಡುವವನಾಗಿದ್ದು ತನ್ನ ಮುಖವನ್ನು ಅಲ್ಲಾಹನಿಗೆ ಶರಣಾಗಿಸುತ್ತಾನೋ ಅವನು ಬಲಿಷ್ಠ ಹಿಡಿಕೆಯನ್ನು ಹಿಡಿದಿದ್ದಾನೆ. ಎಲ್ಲಾ ವಿಷಯಗಳ ಅಂತಿಮ ಫಲಿತಾಂಶವು

وَمَن يُسۡلِمۡ وَجۡهَهُۥٓ إِلَى ٱللَّهِ وَهُوَ مُحۡسِنٞ فَقَدِ ٱسۡتَمۡسَكَ بِٱلۡعُرۡوَةِ ٱلۡوُثۡقَىٰۗ وَإِلَى ٱللَّهِ عَٰقِبَةُ ٱلۡأُمُورِ ٢٢

ಅಲ್ಲಾಹನ ಬಳಿಗೇ ಆಗಿದೆ.

---

23. ಯಾರಾದರೂ ಸತ್ಯನಿಷೇಧಿಯಾದರೆ ಅವನ ಸತ್ಯನಿಷೇಧವು ನಿಮ್ಮನ್ನು ಬೇಸರಪಡಿಸದಿರಲಿ. ಅವರು ಮರಳಿ ಬರುವುದು ನಮ್ಮ ಬಳಿಗೇ ಆಗಿದೆ. ಆಗ ಅವರು ಮಾಡುತ್ತಿದ್ದ ಕರ್ಮಗಳ ಬಗ್ಗೆ ನಾವು ಅವರಿಗೆ ತಿಳಿಸಿಕೊಡುವೆವು. ನಿಶ್ಚಯವಾಗಿಯೂ ಅಲ್ಲಾಹು ಹೃದಯಗಳಲ್ಲಿರುವುದನ್ನು ತಿಳಿಯುತ್ತಾನೆ.

وَمَن كَفَرَ فَلَا يَحۡزُنكَ كُفۡرُهُۥٓۚ إِلَيۡنَا مَرۡجِعُهُمۡ فَنُنَبِّئُهُم بِمَا عَمِلُوٓاْۚ إِنَّ ٱللَّهَ عَلِيمُۢ بِذَاتِ ٱلصُّدُورِ ٢٣

---

24. ನಾವು ಅವರಿಗೆ ತಾತ್ಕಾಲಿಕ ಆನಂದವನ್ನು ನೀಡುತ್ತೇವೆ. ನಂತರ ಅವರನ್ನು ಕಠೋರ ಶಿಕ್ಷೆಗೆ ಬಲವಂತದಿಂದ ತಳ್ಳುತ್ತೇವೆ.

نُمَتِّعُهُمۡ قَلِيلٗا ثُمَّ نَضۡطَرُّهُمۡ إِلَىٰ عَذَابٍ غَلِيظٖ ٢٤

---

25. "ಭೂಮ್ಯಾಕಾಶಗಳನ್ನು ಸೃಷ್ಟಿಸಿದ್ದು ಯಾರು?" ಎಂದು ನೀವು ಅವರೊಡನೆ ಕೇಳಿದರೆ ಅವರು ಖಂಡಿತವಾಗಿಯೂ "ಅಲ್ಲಾಹು" ಎಂದೇ ಹೇಳುತ್ತಾರೆ. ಹೇಳಿರಿ: "ಅಲ್ಲಾಹನಿಗೆ ಸರ್ವಸ್ತುತಿ." ಆದರೆ ಅವರಲ್ಲಿ ಹೆಚ್ಚಿನವರು ತಿಳಿಯುವುದಿಲ್ಲ.

وَلَئِن سَأَلۡتَهُم مَّنۡ خَلَقَ ٱلسَّمَٰوَٰتِ وَٱلۡأَرۡضَ لَيَقُولُنَّ ٱللَّهُۚ قُلِ ٱلۡحَمۡدُ لِلَّهِۚ بَلۡ أَكۡثَرُهُمۡ لَا يَعۡلَمُونَ ٢٥

---

26. ಭೂಮ್ಯಾಕಾಶಗಳಲ್ಲಿರುವ ಎಲ್ಲವೂ ಅಲ್ಲಾಹನಿಗೆ ಸೇರಿದ್ದು. ನಿಶ್ಚಯವಾಗಿಯೂ ಅಲ್ಲಾಹು ನಿರಪೇಕ್ಷನು ಮತ್ತು ಸ್ತುತ್ಯರ್ಹನಾಗಿದ್ದಾನೆ.

لِلَّهِ مَا فِي ٱلسَّمَٰوَٰتِ وَٱلۡأَرۡضِۚ إِنَّ ٱللَّهَ هُوَ ٱلۡغَنِيُّ ٱلۡحَمِيدُ ٢٦

---

27. ಭೂಮಿಯಲ್ಲಿರುವ ಮರಗಳೆಲ್ಲವೂ ಲೇಖನಿಗಳಾಗಿ ಮತ್ತು ಸಮುದ್ರವು ಶಾಯಿಯಾಗಿ ಮಾರ್ಪಟ್ಟು, ನಂತರ ಏಳು ಸಮುದ್ರಗಳು ಬೇರೆಯಿದ್ದರೂ ಅಲ್ಲಾಹನ ವಚನಗಳನ್ನು ಬರೆದು ಮುಗಿಸಲು ಸಾಧ್ಯವಿಲ್ಲ. ನಿಶ್ಚಯವಾಗಿಯೂ ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَلَوۡ أَنَّمَا فِي ٱلۡأَرۡضِ مِن شَجَرَةٍ أَقۡلَٰمٞ وَٱلۡبَحۡرُ يَمُدُّهُۥ مِنۢ بَعۡدِهِۦ سَبۡعَةُ أَبۡحُرٖ مَّا نَفِدَتۡ كَلِمَٰتُ ٱللَّهِۚ إِنَّ ٱللَّهَ عَزِيزٌ حَكِيمٞ ٢٧

---

28. ನಿಮ್ಮನ್ನು ಸೃಷ್ಟಿಸುವುದು ಮತ್ತು ನಿಮಗೆ ಪುನಃ ಜೀವ ನೀಡಿ ಎಬ್ಬಿಸುವುದು ಕೇವಲ ಒಬ್ಬ ವ್ಯಕ್ತಿಗೆ ಸಮಾನವಾಗಿದೆ.[1] ನಿಶ್ಚಯವಾಗಿಯೂ ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ನೋಡುವವನಾಗಿದ್ದಾನೆ.

مَّا خَلۡقُكُمۡ وَلَا بَعۡثُكُمۡ إِلَّا كَنَفۡسٖ وَٰحِدَةٍۚ إِنَّ ٱللَّهَ سَمِيعُۢ بَصِيرٌ ٢٨

---

29. ಅಲ್ಲಾಹು ರಾತ್ರಿಯನ್ನು ಹಗಲಿನಲ್ಲಿ ತೂರಿಸುತ್ತಾನೆ ಮತ್ತು ಹಗಲನ್ನು ರಾತ್ರಿಯಲ್ಲಿ ತೂರಿಸುತ್ತಾನೆಂದು ನೀವು ನೋಡಿಲ್ಲವೇ? ಅವನು ಸೂರ್ಯನನ್ನು ಮತ್ತು ಚಂದ್ರನನ್ನು ಅಧೀನಗೊಳಿಸಿ-ದ್ದಾನೆ. ಎಲ್ಲವೂ ಒಂದು ನಿಶ್ಚಿತ ಅವಧಿಯವರೆಗೆ ಚಲಿಸುತ್ತವೆ.

أَلَمۡ تَرَ أَنَّ ٱللَّهَ يُولِجُ ٱلَّيۡلَ فِي ٱلنَّهَارِ وَيُولِجُ ٱلنَّهَارَ فِي ٱلَّيۡلِ وَسَخَّرَ ٱلشَّمۡسَ وَٱلۡقَمَرَۖ كُلّٞ يَجۡرِيٓ إِلَىٰٓ أَجَلٖ مُّسَمّٗى وَأَنَّ ٱللَّهَ بِمَا

---

[1] ಅಂದರೆ ಸಹಸ್ರಕೋಟಿ ಮಾನವರನ್ನು ಸೃಷ್ಟಿಸಿ, ಅವರನ್ನು ಮೃತಪಡಿಸಿ, ನಂತರ ಪುನರುತ್ಥಾನ ದಿನದಂದು ಅವರಿಗೆ ಪುನಃ ಜೀವ ನೀಡಿ ಎಬ್ಬಿಸುವುದು ಅಲ್ಲಾಹನಿಗೆ ಸಂಬಂಧಿಸಿದಂತೆ ಒಬ್ಬ ವ್ಯಕ್ತಿಯನ್ನು ಸೃಷ್ಟಿಸಿ, ಅವನನ್ನು ಮೃತಪಡಿಸಿ, ಅವನಿಗೆ ಪುನಃ ಜೀವ ನೀಡುವುದಕ್ಕೆ ಸಮಾನವಾಗಿದೆ.

تَعۡمَلُونَ خَبِيرٞ ٢٩

ನಿಶ್ಚಯವಾಗಿಯೂ ಅಲ್ಲಾಹು ನೀವು ಮಾಡುತ್ತಿರುವ ಕರ್ಮಗಳ ಬಗ್ಗೆ ಸೂಕ್ಷ್ಮವಾಗಿ ತಿಳಿಯುತ್ತಾನೆ.

---

ذَٰلِكَ بِأَنَّ ٱللَّهَ هُوَ ٱلۡحَقُّ وَأَنَّ مَا يَدۡعُونَ مِن دُونِهِ ٱلۡبَٰطِلُ وَأَنَّ ٱللَّهَ هُوَ ٱلۡعَلِيُّ ٱلۡكَبِيرُ ٣٠

30. ಅದೇಕೆಂದರೆ ಅಲ್ಲಾಹನೇ ಸತ್ಯ. ಅವನನ್ನು ಬಿಟ್ಟು ಅವರು ಕರೆದು ಪ್ರಾರ್ಥಿಸುವ ದೇವರುಗಳೆಲ್ಲವೂ ಮಿಥ್ಯ. ನಿಶ್ಚಯವಾಗಿಯೂ ಅಲ್ಲಾಹು ಅತ್ಯುನ್ನತನು ಮತ್ತು ಅತಿಶ್ರೇಷ್ಠನಾಗಿದ್ದಾನೆ.

---

أَلَمۡ تَرَ أَنَّ ٱلۡفُلۡكَ تَجۡرِي فِي ٱلۡبَحۡرِ بِنِعۡمَتِ ٱللَّهِ لِيُرِيَكُم مِّنۡ ءَايَٰتِهِۦٓۚ إِنَّ فِي ذَٰلِكَ لَأٓيَٰتٖ لِّكُلِّ صَبَّارٖ شَكُورٖ ٣١

31. ಸಮುದ್ರದಲ್ಲಿ ನಾವೆಗಳು ಸಂಚರಿಸುವುದು ಅಲ್ಲಾಹನ ಅನುಗ್ರಹದಿಂದ ಎಂದು ನೀವು ನೋಡಿಲ್ಲವೇ? ಅದು ಅವನ ದೃಷ್ಟಾಂತಗಳಲ್ಲಿ ಕೆಲವನ್ನು ನಿಮಗೆ ತೋರಿಸಿಕೊಡಲೆಂದು. ನಿಶ್ಚಯವಾಗಿಯೂ ತಾಳ್ಮೆಯಿಂದ ಜೀವಿಸುವ ಮತ್ತು ಕೃತಜ್ಞರಾಗಿರುವ ಎಲ್ಲರಿಗೂ ಅದರಲ್ಲಿ ದೃಷ್ಟಾಂತಗಳಿವೆ.

---

وَإِذَا غَشِيَهُم مَّوۡجٞ كَٱلظُّلَلِ دَعَوُاْ ٱللَّهَ مُخۡلِصِينَ لَهُ ٱلدِّينَ فَلَمَّا نَجَّىٰهُمۡ إِلَى ٱلۡبَرِّ فَمِنۡهُم مُّقۡتَصِدٞۚ وَمَا يَجۡحَدُ بِـَٔايَٰتِنَآ إِلَّا كُلُّ خَتَّارٖ كَفُورٖ ٣٢

32. ಬೆಟ್ಟದಂತಹ ಅಲೆಗಳು ಅವರನ್ನು ಆವರಿಸಿದಾಗ, ಅವರು ಪ್ರಾರ್ಥನೆಯನ್ನು ಅಲ್ಲಾಹನಿಗೆ ನಿಷ್ಕಳಂಕಗೊಳಿಸಿ ಅವನನ್ನು ಮಾತ್ರ ಕರೆದು ಪ್ರಾರ್ಥಿಸುತ್ತಾರೆ. ಆದರೆ ಅವನು ಅವರನ್ನು ರಕ್ಷಿಸಿ ದಡಕ್ಕೆ ತಲುಪಿಸಿದರೆ ಅವರಲ್ಲಿ ಕೆಲವರು ಮಧ್ಯಮ ನಿಲುವು ಸ್ವೀಕರಿಸುತ್ತಾರೆ. ವಿಶ್ವಾಸದ್ರೋಹಿಗಳು ಮತ್ತು ಕೃತಘ್ನರು ಮಾತ್ರ ನಮ್ಮ ವಚನಗಳನ್ನು ನಿಷೇಧಿಸುತ್ತಾರೆ.

---

يَٰٓأَيُّهَا ٱلنَّاسُ ٱتَّقُواْ رَبَّكُمۡ وَٱخۡشَوۡاْ يَوۡمٗا لَّا يَجۡزِي وَالِدٌ عَن وَلَدِهِۦ وَلَا مَوۡلُودٌ هُوَ جَازٍ عَن وَالِدِهِۦ شَيۡـًٔاۚ إِنَّ وَعۡدَ ٱللَّهِ حَقّٞۖ فَلَا تَغُرَّنَّكُمُ ٱلۡحَيَوٰةُ ٱلدُّنۡيَا وَلَا يَغُرَّنَّكُم بِٱللَّهِ ٱلۡغَرُورُ ٣٣

33. ಓ ಮನುಷ್ಯರೇ! ನೀವು ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಭಯಪಡಿರಿ. ಒಂದು ದಿನದ ಬಗ್ಗೆ ಬಹಳ ಎಚ್ಚರದಿಂದಿರಿ. ಅಂದು ಯಾವುದೇ ತಂದೆಯು ತನ್ನ ಮಕ್ಕಳಿಗೆ ಉಪಕಾರ ಮಾಡುವುದಿಲ್ಲ. ಮಕ್ಕಳು ತಮ್ಮ ತಂದೆಗೆ ಉಪಕಾರ ಮಾಡುವುದಿಲ್ಲ. ನಿಶ್ಚಯವಾಗಿಯೂ ಅಲ್ಲಾಹನ ವಾಗ್ದಾನವು ಸತ್ಯವಾಗಿದೆ. ಆದ್ದರಿಂದ ಇಹಲೋಕ ಜೀವನವು ನಿಮ್ಮನ್ನು ಮರುಳುಗೊಳಿಸ-ದಿರಲಿ. ನಯವಂಚಕನಾದ ಶೈತಾನನು ಅಲ್ಲಾಹನ ವಿಷಯದಲ್ಲಿ ನಿಮ್ಮನ್ನು ಮರುಳುಗೊಳಿಸದಿರಲಿ.

---

إِنَّ ٱللَّهَ عِندَهُۥ عِلۡمُ ٱلسَّاعَةِ وَيُنَزِّلُ ٱلۡغَيۡثَ وَيَعۡلَمُ مَا فِي ٱلۡأَرۡحَامِۖ وَمَا تَدۡرِي نَفۡسٞ مَّاذَا تَكۡسِبُ غَدٗاۖ وَمَا تَدۡرِي نَفۡسُۢ بِأَيِّ أَرۡضٖ تَمُوتُۚ إِنَّ ٱللَّهَ عَلِيمٌ خَبِيرُۢ ٣٤

34. ನಿಶ್ಚಯವಾಗಿಯೂ ಅಂತ್ಯಸಮಯದ ಜ್ಞಾನವಿರುವುದು ಅಲ್ಲಾಹನ ಬಳಿ ಮಾತ್ರ. ಅವನು ಮಳೆಯನ್ನು ಸುರಿಸುತ್ತಾನೆ. ಅವನು ಗರ್ಭಾಶಯಗಳಲ್ಲಿ ಏನಿದೆಯೆಂದು ತಿಳಿಯುತ್ತಾನೆ. ತಾನು ನಾಳೆ ಏನು ಮಾಡುತ್ತೇನೆಂದು ಯಾವುದೇ ವ್ಯಕ್ತಿಗೂ ತಿಳಿದಿಲ್ಲ. ತಾನು ಯಾವ ಭೂಮಿಯಲ್ಲಿ ಸಾಯುತ್ತೇನೆಂದು ಯಾವುದೇ ವ್ಯಕ್ತಿಗೂ ತಿಳಿದಿಲ್ಲ. ನಿಶ್ಚಯವಾಗಿಯೂ ಅಲ್ಲಾಹು ಸರ್ವಜ್ಞನು ಮತ್ತು ಸೂಕ್ಷ್ಮಜ್ಞಾನಿಯಾಗಿದ್ದಾನೆ.

# 32. ಅಸ್ಸಜ್ದ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಅಲಿಫ್-ಲಾಮ್-ಮೀಮ್.

الٓمٓ ١

2. ಈ ಗ್ರಂಥವು ಸರ್ವಲೋಕಗಳ ಪರಿಪಾಲಕನ (ಅಲ್ಲಾಹನ) ಕಡೆಯಿಂದ ಅವತೀರ್ಣವಾಗಿದೆ. ಇದರಲ್ಲಿ ಯಾವುದೇ ಸಂದೇಹವಿಲ್ಲ.

تَنزِيلُ ٱلۡكِتَٰبِ لَا رَيۡبَ فِيهِ مِن رَّبِّ ٱلۡعَٰلَمِينَ ٢

3. ಅವರು (ಪ್ರವಾದಿ) ಇದನ್ನು ಸ್ವಯಂ ರಚಿಸಿದ್ದಾರೆ ಎಂದು ಅವರು ಹೇಳುತ್ತಿದ್ದಾರೆಯೇ? ಅಲ್ಲ, ವಾಸ್ತವವಾಗಿ ಅದು ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯಿಂದ ಅವತೀರ್ಣವಾದ ಸತ್ಯವಾಗಿದೆ. ನಿಮಗಿಂತ ಮೊದಲು ಯಾವುದೇ ಮುನ್ನೆಚ್ಚರಿಕೆ-ಗಾರರು ಬರದ ಈ ಜನರಿಗೆ ಎಚ್ಚರಿಕೆ ನೀಡಲೆಂದು. ಅವರು ಸನ್ಮಾರ್ಗವನ್ನು ಸ್ವೀಕರಿಸುವುದಕ್ಕಾಗಿ.

أَمۡ يَقُولُونَ ٱفۡتَرَىٰهُۚ بَلۡ هُوَ ٱلۡحَقُّ مِن رَّبِّكَ لِتُنذِرَ قَوۡمٗا مَّآ أَتَىٰهُم مِّن نَّذِيرٖ مِّن قَبۡلِكَ لَعَلَّهُمۡ يَهۡتَدُونَ ٣

4. ಅಲ್ಲಾಹನೇ ಭೂಮ್ಯಾಕಾಶಗಳನ್ನು ಮತ್ತು ಅವುಗಳ ನಡುವೆಯಿರುವ ಎಲ್ಲಾ ವಸ್ತುಗಳನ್ನು ಆರು ದಿನಗಳಲ್ಲಿ ಸೃಷ್ಟಿಸಿದವನು. ನಂತರ ಅವನು ಸಿಂಹಾಸನದಲ್ಲಿ ಆರೂಢನಾದನು. ಅವನ ಹೊರತು ನಿಮಗೆ ಬೇರೆ ರಕ್ಷಕರೋ, ಶಿಫಾರಸುಗಾರರೋ ಇಲ್ಲ. ಆದರೂ ನೀವು ಉಪದೇಶ ಪಡೆಯುವುದಿಲ್ಲವೇ?

ٱللَّهُ ٱلَّذِي خَلَقَ ٱلسَّمَٰوَٰتِ وَٱلۡأَرۡضَ وَمَا بَيۡنَهُمَا فِي سِتَّةِ أَيَّامٖ ثُمَّ ٱسۡتَوَىٰ عَلَى ٱلۡعَرۡشِۖ مَا لَكُم مِّن دُونِهِۦ مِن وَلِيّٖ وَلَا شَفِيعٍۚ أَفَلَا تَتَذَكَّرُونَ ٤

5. ಅವನು ಆಕಾಶದಿಂದ ಭೂಮಿಯ ತನಕ ಎಲ್ಲಾ ಕಾರ್ಯಗಳನ್ನು ನಿಯಂತ್ರಿಸುತ್ತಾನೆ. ನಂತರ ನಿಮ್ಮ ಎಣಿಕೆಯ ಪ್ರಕಾರ ಒಂದು ಸಾವಿರ ವರ್ಷಗಳಷ್ಟು ದೀರ್ಘವಾದ ಒಂದು ದಿನದಂದು ಆ ಕಾರ್ಯಗಳು ಅವನ ಬಳಿಗೆ ಏರಿಹೋಗುತ್ತವೆ.

يُدَبِّرُ ٱلۡأَمۡرَ مِنَ ٱلسَّمَآءِ إِلَى ٱلۡأَرۡضِ ثُمَّ يَعۡرُجُ إِلَيۡهِ فِي يَوۡمٖ كَانَ مِقۡدَارُهُۥٓ أَلۡفَ سَنَةٖ مِّمَّا تَعُدُّونَ ٥

6. ಅವನು ದೃಶ್ಯ-ಅದೃಶ್ಯಗಳನ್ನು ತಿಳಿದವನಾಗಿದ್ದಾನೆ. ಅವನು ಪ್ರಬಲನು ಮತ್ತು ದಯೆ ತೋರುವವನಾಗಿದ್ದಾನೆ.

ذَٰلِكَ عَٰلِمُ ٱلۡغَيۡبِ وَٱلشَّهَٰدَةِ ٱلۡعَزِيزُ ٱلرَّحِيمُ ٦

7. ಅವನು ತನ್ನ ಎಲ್ಲಾ ಸೃಷ್ಟಿಗಳನ್ನು ಅತ್ಯಂತ ಸಮರ್ಪಕವಾಗಿ ಸೃಷ್ಟಿಸಿದ್ದಾನೆ. ಅವನು ಮನುಷ್ಯ ಸೃಷ್ಟಿಯನ್ನು ಜೇಡಿಮಣ್ಣಿನಿಂದ ಆರಂಭಿಸಿದನು.

ٱلَّذِيٓ أَحۡسَنَ كُلَّ شَيۡءٍ خَلَقَهُۥۖ وَبَدَأَ خَلۡقَ ٱلۡإِنسَٰنِ مِن طِينٖ ٧

8. ನಂತರ ಅವನ (ಮನುಷ್ಯನ) ಸಂತಾನವನ್ನು ತುಚ್ಛ ನೀರಿನ ಸತ್ವದಿಂದ (ವೀರ್ಯದಿಂದ) ಉಂಟುಮಾಡಿದನು.

ثُمَّ جَعَلَ نَسۡلَهُۥ مِن سُلَٰلَةٖ مِّن مَّآءٖ مَّهِينٖ ٨

9. ನಂತರ ಅವನಿಗೆ ಸರಿಯಾದ ರೂಪವನ್ನು ನೀಡಿ, ತನ್ನ ಕಡೆಯ ಆತ್ಮವನ್ನು ಊದಿದನು. ಅವನು ನಿಮಗೆ ಕೇಳುವ ಶಕ್ತಿಯನ್ನು, ನೋಡುವ ಶಕ್ತಿಯನ್ನು ಮತ್ತು ಹೃದಯವನ್ನು ನೀಡಿದನು. ನೀವು ಅಲ್ಪವೇ ಕೃತಜ್ಞರಾಗುತ್ತೀರಿ.

ثُمَّ سَوَّىٰهُ وَنَفَخَ فِيهِ مِن رُّوحِهِۦۖ وَجَعَلَ
لَكُمُ ٱلسَّمۡعَ وَٱلۡأَبۡصَٰرَ وَٱلۡأَفۡـِٔدَةَۚ قَلِيلٗا
مَّا تَشۡكُرُونَ ٩

10. ಸತ್ಯನಿಷೇಧಿಗಳು ಹೇಳಿದರು: “ನಾವು ಭೂಮಿಯಲ್ಲಿ ವಿಲೀನವಾಗಿ ಕಣ್ಮರೆಯಾದ ಬಳಿಕ ನಮ್ಮನ್ನು ಹೊಸದಾಗಿ ಸೃಷ್ಟಿಸಲಾಗುವುದೇ?” ಅಲ್ಲ, ವಾಸ್ತವವಾಗಿ ಅವರು ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಭೇಟಿಯಾಗುವುದನ್ನು ನಿಷೇಧಿಸಿದ್ದಾರೆ.

وَقَالُوٓاْ أَءِذَا ضَلَلۡنَا فِي ٱلۡأَرۡضِ أَءِنَّا لَفِي خَلۡقٖ
جَدِيدِۭۚ بَلۡ هُم بِلِقَآءِ رَبِّهِمۡ كَٰفِرُونَ ١٠

11. ಹೇಳಿರಿ: “ನಿಮ್ಮ ಹೊಣೆ ವಹಿಸಿಕೊಡಲಾದ ಮರಣದ ದೂತರು ನಿಮ್ಮ ಆತ್ಮವನ್ನು ವಶಪಡಿಸುವರು. ನಂತರ ನಿಮ್ಮನ್ನು ನಿಮ್ಮ ಪರಿಪಾಲಕನ (ಅಲ್ಲಾಹನ) ಬಳಿಗೆ ಮರಳಿಸಲಾಗುವುದು.”

۞قُلۡ يَتَوَفَّىٰكُم مَّلَكُ ٱلۡمَوۡتِ ٱلَّذِي وُكِّلَ بِكُمۡ
ثُمَّ إِلَىٰ رَبِّكُمۡ تُرۡجَعُونَ ١١

12. ಅಪರಾಧಿಗಳು ಅವರ ಪರಿಪಾಲಕನ (ಅಲ್ಲಾಹನ) ಮುಂದೆ ತಲೆತಗ್ಗಿಸಿ ನಿಂತು, “ನಮ್ಮ ಪರಿಪಾಲಕನೇ! ನಾವು ಕಣ್ಣಾರೆ ನೋಡಿದ್ದೇವೆ ಮತ್ತು ಕೇಳಿದ್ದೇವೆ. ಆದ್ದರಿಂದ ನಮ್ಮನ್ನು ಭೂಮಿಗೆ ಮರಳಿ ಕಳುಹಿಸು. ನಾವು ಸತ್ಕರ್ಮಗಳನ್ನು ಮಾಡುತ್ತೇವೆ. ಖಂಡಿತವಾಗಿಯೂ ಈಗ ನಮಗೆ ದೃಢನಂಬಿಕೆ ಬಂದಿದೆ” ಎಂದು ಹೇಳುವ ದೃಶ್ಯವನ್ನು ನೀವು ನೋಡಿರುತ್ತಿದ್ದರೆ!

وَلَوۡ تَرَىٰٓ إِذِ ٱلۡمُجۡرِمُونَ نَاكِسُواْ رُءُوسِهِمۡ عِندَ
رَبِّهِمۡ رَبَّنَآ أَبۡصَرۡنَا وَسَمِعۡنَا فَٱرۡجِعۡنَا نَعۡمَلۡ
صَٰلِحًا إِنَّا مُوقِنُونَ ١٢

13. ನಾವು ಇಚ್ಛಿಸುತ್ತಿದ್ದರೆ ಪ್ರತಿಯೊಬ್ಬ ವ್ಯಕ್ತಿಗೂ ಸನ್ಮಾರ್ಗವನ್ನು ತೋರಿಸುತ್ತಿದ್ದೆವು. ಆದರೆ, ನಾನು ಜಿನ್ನ್ ಮತ್ತು ಮಾನವರಿಂದ ನರಕವನ್ನು ತುಂಬಿಸಿಯೇ ಬಿಡುತ್ತೇನೆ ಎಂಬ ನನ್ನ ವಚನವು ಖಾತ್ರಿಯಾಗಿದೆ.

وَلَوۡ شِئۡنَا لَأٓتَيۡنَا كُلَّ نَفۡسٍ هُدَىٰهَا وَلَٰكِنۡ
حَقَّ ٱلۡقَوۡلُ مِنِّي لَأَمۡلَأَنَّ جَهَنَّمَ مِنَ ٱلۡجِنَّةِ
وَٱلنَّاسِ أَجۡمَعِينَ ١٣

14. ಆದ್ದರಿಂದ ನಿಮ್ಮ ಈ ದಿನದ ಭೇಟಿಯನ್ನು ನೀವು ಮರೆತಿರುವ ಕಾರಣದಿಂದ ಶಿಕ್ಷೆಯ ರುಚಿಯನ್ನು ನೋಡಿರಿ. ಇಂದು ನಾವು ನಿಮ್ಮನ್ನು ಮರೆತಿದ್ದೇವೆ. ನೀವು ಮಾಡುತ್ತಿದ್ದ ದುಷ್ಕರ್ಮಗಳ ಕಾರಣದಿಂದ ಶಾಶ್ವತ ಶಿಕ್ಷೆಯ ರುಚಿಯನ್ನು ನೋಡಿರಿ.

فَذُوقُواْ بِمَا نَسِيتُمۡ لِقَآءَ يَوۡمِكُمۡ هَٰذَآ إِنَّا
نَسِينَٰكُمۡۖ وَذُوقُواْ عَذَابَ ٱلۡخُلۡدِ بِمَا كُنتُمۡ
تَعۡمَلُونَ ١٤

15. ನಮ್ಮ ದೃಷ್ಟಾಂತಗಳಲ್ಲಿ ವಿಶ್ವಾಸವಿಡುವವರು ಯಾರೆಂದರೆ, ಅವುಗಳ ಮೂಲಕ ಉಪದೇಶ ಮಾಡಲಾದರೆ ಸಾಷ್ಟಾಂಗ ಮಾಡುತ್ತಾ ಬೀಳುವವರು ಮತ್ತು ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಸ್ತುತಿಸುತ್ತಾ ಕೊಂಡಾಡುವವರು. ಅವರು ಅಹಂಕಾರ ಪಡುವುದಿಲ್ಲ.

إِنَّمَا يُؤۡمِنُ بِـَٔايَٰتِنَا ٱلَّذِينَ إِذَا ذُكِّرُواْ بِهَا
خَرُّواْ سُجَّدٗاۤ وَسَبَّحُواْ بِحَمۡدِ رَبِّهِمۡ وَهُمۡ لَا
يَسۡتَكۡبِرُونَ ١٥

16. ಅವರ ಪಾರ್ಶ್ವಗಳು ಅವರ ಹಾಸಿಗೆಗಳನ್ನು ಬಿಟ್ಟು ಬೇರ್ಪಡುತ್ತವೆ. ಅವರು ಭಯ ಮತ್ತು ನಿರೀಕ್ಷೆಯಿಂದ ಅವರ ಪರಿಪಾಲಕನನ್ನು (ಅಲ್ಲಾಹನನ್ನು) ಕರೆದು ಪ್ರಾರ್ಥಿಸುತ್ತಾರೆ. ನಾವು ಅವರಿಗೆ ಒದಗಿಸಿದ ಸಂಪತ್ತಿನಿಂದ ಅವರು ಖರ್ಚು ಮಾಡುತ್ತಾರೆ.

تَتَجَافَىٰ جُنُوبُهُمْ عَنِ ٱلْمَضَاجِعِ يَدْعُونَ رَبَّهُمْ
خَوْفًا وَطَمَعًا وَمِمَّا رَزَقْنَٰهُمْ يُنفِقُونَ ﴿١٦﴾

17. ಕಣ್ಣು ತಂಪಾಗಿಸುವ ಯಾವೆಲ್ಲಾ ವಸ್ತುಗಳನ್ನು ಅವರಿಗೋಸ್ಕರ ಗೋಪ್ಯವಾಗಿಡಲಾಗಿದೆ ಎಂದು ಯಾವುದೇ ವ್ಯಕ್ತಿಯೂ ತಿಳಿದಿಲ್ಲ. ಇದು ಅವರು ಮಾಡಿದ ಸತ್ಕರ್ಮಗಳ ಪ್ರತಿಫಲವಾಗಿದೆ.

فَلَا تَعْلَمُ نَفْسٌ مَّآ أُخْفِىَ لَهُم مِّن قُرَّةِ أَعْيُنٍ
جَزَآءًۢ بِمَا كَانُوا۟ يَعْمَلُونَ ﴿١٧﴾

18. ಹಾಗಾದರೆ ಸತ್ಯವಿಶ್ವಾಸಿ ದುಷ್ಕರ್ಮಿಗೆ ಸಮಾನನಾಗುವನೇ? ಇಲ್ಲ, ಅವರು ಸಮಾನರಾಗುವುದಿಲ್ಲ.

أَفَمَن كَانَ مُؤْمِنًا كَمَن كَانَ فَاسِقًا ۚ
لَّا يَسْتَوُۥنَ ﴿١٨﴾

19. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ ಅವರಿಗೆ ಶಾಶ್ವತ ಸ್ವರ್ಗೋದ್ಯಾನಗಳಿವೆ. ಅವರು ಮಾಡಿದ ಸತ್ಕರ್ಮಗಳ ಫಲವಾಗಿ ಅವರಿಗೆ ಅಲ್ಲಿ ಆತಿಥ್ಯವಿದೆ.

أَمَّا ٱلَّذِينَ ءَامَنُوا۟ وَعَمِلُوا۟ ٱلصَّٰلِحَٰتِ فَلَهُمْ
جَنَّٰتُ ٱلْمَأْوَىٰ نُزُلًۢا بِمَا كَانُوا۟ يَعْمَلُونَ ﴿١٩﴾

20. ದುಷ್ಕರ್ಮವೆಸಗಿದವರು ಯಾರೋ ಅವರ ವಾಸಸ್ಥಳವು ನರಕಾಗ್ನಿಯಾಗಿದೆ. ಅವರು ಅದರಿಂದ ತಪ್ಪಿಸಿಕೊಳ್ಳಲು ಪ್ರಯ-ತ್ನಿಸುವಾಗಲೆಲ್ಲಾ ಅವರನ್ನು ಮತ್ತೆ ಅದಕ್ಕೇ ತಳ್ಳಲಾಗುವುದು. (ಅವರೊಡನೆ ಹೇಳಲಾಗುವುದು:) "ನೀವು ನಿಷೇಧಿಸುತ್ತಿದ್ದ ಆ ನರಕ ಶಿಕ್ಷೆಯ ರುಚಿಯನ್ನು ನೋಡಿರಿ."

وَأَمَّا ٱلَّذِينَ فَسَقُوا۟ فَمَأْوَىٰهُمُ ٱلنَّارُ ۖ كُلَّمَآ أَرَادُوٓا۟
أَن يَخْرُجُوا۟ مِنْهَآ أُعِيدُوا۟ فِيهَا وَقِيلَ لَهُمْ ذُوقُوا۟
عَذَابَ ٱلنَّارِ ٱلَّذِى كُنتُم بِهِۦ تُكَذِّبُونَ ﴿٢٠﴾

21. ಆ ಮಹಾ ಶಿಕ್ಷೆಗೆ ಮೊದಲು ನಾವು ಅವರಿಗೆ (ಇಹಲೋಕದಲ್ಲಿ) ಕೆಲವು ಸಣ್ಣ ಶಿಕ್ಷೆಗಳ ರುಚಿಯನ್ನು ತೋರಿಸುತ್ತೇವೆ. ಅವರು (ಪಶ್ಚಾತ್ತಾಪಪಟ್ಟು) ಮರಳಿ ಬರಲೆಂದು.

وَلَنُذِيقَنَّهُم مِّنَ ٱلْعَذَابِ ٱلْأَدْنَىٰ دُونَ ٱلْعَذَابِ
ٱلْأَكْبَرِ لَعَلَّهُمْ يَرْجِعُونَ ﴿٢١﴾

22. ತನ್ನ ಪರಿಪಾಲಕನ (ಅಲ್ಲಾಹನ) ವಚನಗಳ ಮೂಲಕ ಉಪದೇಶ ನೀಡಲಾದ ಬಳಿಕವೂ ಮುಖ ತಿರುಗಿಸಿ ನಡೆಯುವವನಿಗಿಂತ ದೊಡ್ಡ ಅಕ್ರಮಿ ಯಾರು? ನಿಶ್ಚಯವಾಗಿಯೂ ನಾವು ಅಂತಹ ಅಪರಾಧಿಗಳಿಂದ ಪ್ರತೀಕಾರ ಪಡೆಯುವೆವು.

وَمَنْ أَظْلَمُ مِمَّن ذُكِّرَ بِـَٔايَٰتِ رَبِّهِۦ ثُمَّ أَعْرَضَ
عَنْهَآ ۚ إِنَّا مِنَ ٱلْمُجْرِمِينَ مُنتَقِمُونَ ﴿٢٢﴾

23. ನಾವು ಮೂಸಾರಿಗೆ ಗ್ರಂಥವನ್ನು ನೀಡಿದ್ದೇವೆ. ಆದ್ದರಿಂದ ಅವರನ್ನು ಭೇಟಿಯಾಗುವ ವಿಷಯದಲ್ಲಿ ನಿಮಗೆ ಸಂಶಯ-ವುಂಟಾಗದಿರಲಿ.[1] ನಾವು ಅದನ್ನು (ಗ್ರಂಥವನ್ನು) ಇಸ್ರಾಯೇಲ್ ಮಕ್ಕಳಿಗೆ ಮಾರ್ಗದರ್ಶಿಯಾಗಿ ಮಾಡಿದೆವು.

وَلَقَدْ ءَاتَيْنَا مُوسَى ٱلْكِتَٰبَ فَلَا تَكُن
فِى مِرْيَةٍ مِّن لِّقَآئِهِۦ ۖ وَجَعَلْنَٰهُ هُدًى لِّبَنِىٓ
إِسْرَٰٓءِيلَ ﴿٢٣﴾

24. ಅವರು ತಾಳ್ಮೆಯಿಂದ ಜೀವಿಸಿದಾಗ ನಾವು ಅವರಲ್ಲಿ ಕೆಲವರನ್ನು

وَجَعَلْنَا مِنْهُمْ أَئِمَّةً يَهْدُونَ بِأَمْرِنَا لَمَّا صَبَرُوا۟ ۖ

[1] ಆಕಾಶಯಾನ (ಮಿಅರಾಜ್) ಸಂದರ್ಭದಲ್ಲಿ ಪ್ರವಾದಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರವರು ಪ್ರವಾದಿ ಮೂಸಾರನ್ನು ಭೇಟಿಯಾಗಿದ್ದರು.

ನಮ್ಮ ಆಜ್ಞೆಯ ಪ್ರಕಾರ ಜನರಿಗೆ ಸನ್ಮಾರ್ಗ ತೋರಿಸುವ ಮುಖಂಡರನ್ನಾಗಿ ಮಾಡಿದೆವು. ಅವರು ನಮ್ಮ ವಚನಗಳಲ್ಲಿ ದೃಢನಂಬಿಕೆಯುಳ್ಳವರಾಗಿದ್ದರು.

وَكَانُوا۟ بِـَٔايَـٰتِنَا يُوقِنُونَ ٢٤

---

25. ಅವರು ಭಿನ್ನಮತ ತಳೆದಿರುವ ವಿಷಯಗಳಲ್ಲಿ ನಿಮ್ಮ ಪರಿಪಾಲಕನು (ಅಲ್ಲಾಹು) ಪುನರುತ್ಥಾನ ದಿನದಂದು ಅವರ ನಡುವೆ ಖಂಡಿತ ತೀರ್ಪು ನೀಡುತ್ತಾನೆ.

إِنَّ رَبَّكَ هُوَ يَفْصِلُ بَيْنَهُمْ يَوْمَ ٱلْقِيَـٰمَةِ فِيمَا
كَانُوا۟ فِيهِ يَخْتَلِفُونَ ٢٥

---

26. ನಾವು ಅವರಿಗಿಂತ ಮೊದಲು ಎಷ್ಟೆಷ್ಟು ತಲೆಮಾರುಗಳನ್ನು ನಾಶ ಮಾಡಿದ್ದೇವೆ ಎಂಬ ಸತ್ಯವು ಅವರಿಗೆ ಸನ್ಮಾರ್ಗವನ್ನು ತೋರಿಸಿಕೊಡಲಿಲ್ಲವೇ? ಅವರ ವಾಸಸ್ಥಳಗಳ ಮೂಲಕ ಇವರು ಸಾಗುತ್ತಿದ್ದಾರೆ! ನಿಶ್ಚಯವಾಗಿಯೂ ಅದರಲ್ಲಿ ದೃಷ್ಟಾಂತಗಳಿವೆ. ಆದರೂ ಇವರು ಕಿವಿಗೊಡುವುದಿಲ್ಲವೇ?

أَوَلَمْ يَهْدِ لَهُمْ كَمْ أَهْلَكْنَا مِن قَبْلِهِم مِّنَ
ٱلْقُرُونِ يَمْشُونَ فِى مَسَـٰكِنِهِمْ ۚ إِنَّ فِى ذَٰلِكَ
لَـَٔايَـٰتٍ ۖ أَفَلَا يَسْمَعُونَ ٢٦

---

27. ನಾವು ಬರಡು ಭೂಮಿಗೆ ನೀರು ಹರಿಸುವುದನ್ನು ಅವರು ನೋಡಿಲ್ಲವೇ? ನಂತರ ಅದರಿಂದ ನಾವು ಬೆಳೆಗಳನ್ನು ಹೊರತರುತ್ತೇವೆ. ಅದನ್ನು ಅವರ ಜಾನುವಾರುಗಳು ಮತ್ತು ಸ್ವತಃ ಅವರು ಕೂಡ ತಿನ್ನುತ್ತಾರೆ. ಆದರೂ ಅವರು ನೋಡುವುದಿಲ್ಲವೇ?

أَوَلَمْ يَرَوْا۟ أَنَّا نَسُوقُ ٱلْمَآءَ إِلَى ٱلْأَرْضِ ٱلْجُرُزِ
فَنُخْرِجُ بِهِۦ زَرْعًا تَأْكُلُ مِنْهُ أَنْعَـٰمُهُمْ
وَأَنفُسُهُمْ ۖ أَفَلَا يُبْصِرُونَ ٢٧

---

28. ಅವರು ಹೇಳುತ್ತಾರೆ: "ನೀವು ಸತ್ಯವನ್ನೇ ಹೇಳುವವರಾಗಿದ್ದರೆ ಈ ತೀರ್ಪು ಯಾವಾಗ ಬರುತ್ತದೆ ಎಂದು ಹೇಳಿರಿ!"

وَيَقُولُونَ مَتَىٰ هَـٰذَا ٱلْفَتْحُ إِن
كُنتُمْ صَـٰدِقِينَ ٢٨

---

29. ಹೇಳಿರಿ: "ತೀರ್ಪು ಬರುವ ದಿನದಂದು ಸತ್ಯನಿಷೇಧಿಗಳು ವಿಶ್ವಾಸವನ್ನು ಸ್ವೀಕರಿಸಿದರೆ ಅದು ಅವರಿಗೆ ಪ್ರಯೋಜನಪಡುವು-ದಿಲ್ಲ. ಅವರಿಗೆ ಕಾಲಾವಕಾಶವನ್ನೂ ನೀಡಲಾಗುವುದಿಲ್ಲ."

قُلْ يَوْمَ ٱلْفَتْحِ لَا يَنفَعُ ٱلَّذِينَ كَفَرُوٓا۟ إِيمَـٰنُهُمْ
وَلَا هُمْ يُنظَرُونَ ٢٩

---

30. ಆದ್ದರಿಂದ ನೀವು ಅವರಿಂದ ವಿಮುಖರಾಗಿರಿ ಮತ್ತು ಕಾಯಿರಿ. ನಿಶ್ಚಯವಾಗಿಯೂ ಅವರೂ ಕಾಯುತ್ತಿದ್ದಾರೆ.

فَأَعْرِضْ عَنْهُمْ وَٱنتَظِرْ إِنَّهُم مُّنتَظِرُونَ ٣٠

# 33. ಅಲ್-ಅಹ್ಝಾಬ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಓ ಪ್ರವಾದಿಯವರೇ! ಅಲ್ಲಾಹನನ್ನು ಭಯಪಡಿರಿ. ಸತ್ಯನಿಷೇಧಿಗಳನ್ನು ಮತ್ತು ಕಪಟವಿಶ್ವಾಸಿಗಳನ್ನು ಅನುಸರಿಸಬೇಡಿ. ನಿಶ್ಚಯವಾಗಿಯೂ ಅಲ್ಲಾಹು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ.

يَٰٓأَيُّهَا ٱلنَّبِيُّ ٱتَّقِ ٱللَّهَ وَلَا تُطِعِ ٱلۡكَٰفِرِينَ
وَٱلۡمُنَٰفِقِينَۚ إِنَّ ٱللَّهَ كَانَ عَلِيمًا حَكِيمٗا ١

2. ನಿಮಗೆ ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯಿಂದ ನೀಡಲಾಗುವ ದೇವವಾಣಿಗಳನ್ನು ಅನುಸರಿಸಿರಿ. ನಿಶ್ಚಯವಾಗಿಯೂ ಅಲ್ಲಾಹು ನೀವು ಮಾಡುತ್ತಿರುವ ಕರ್ಮಗಳನ್ನು ಸೂಕ್ಷ್ಮವಾಗಿ ತಿಳಿಯುತ್ತಾನೆ.

وَٱتَّبِعۡ مَا يُوحَىٰٓ إِلَيۡكَ مِن رَّبِّكَۚ إِنَّ ٱللَّهَ كَانَ
بِمَا تَعۡمَلُونَ خَبِيرٗا ٢

3. ಅಲ್ಲಾಹನಲ್ಲಿ ಭರವಸೆಯಿಡಿ. ಕಾರ್ಯನಿರ್ವಾಹಕನಾಗಿ ಅಲ್ಲಾಹು ಸಾಕು.

وَتَوَكَّلۡ عَلَى ٱللَّهِۚ وَكَفَىٰ بِٱللَّهِ وَكِيلٗا ٣

4. ಅಲ್ಲಾಹು ಯಾವುದೇ ವ್ಯಕ್ತಿಗೂ ಅವನ ದೇಹದೊಳಗೆ ಎರಡು ಹೃದಯಗಳನ್ನು ಉಂಟುಮಾಡಿಲ್ಲ.[1] ನೀವು ಝಿಹಾರ್ ಮಾಡುವ ನಿಮ್ಮ ಪತ್ನಿಯರನ್ನು ಅವನು ನಿಮಗೆ ತಾಯಿಯಾಗಿ ಮಾಡಿಲ್ಲ.[2] ನಿಮ್ಮ ದತ್ತುಪುತ್ರರನ್ನು ಅವನು ನಿಮಗೆ ಪುತ್ರರಾಗಿ ಮಾಡಿಲ್ಲ.[3] ಇವೆಲ್ಲವೂ ನೀವು ನಿಮ್ಮ ಬಾಯಿಯಿಂದ ಹೇಳುವ ಮಾತುಗಳಾಗಿವೆ. ಅಲ್ಲಾಹು ಸತ್ಯವನ್ನೇ ಹೇಳುತ್ತಾನೆ. ಅವನು ಸನ್ಮಾರ್ಗವನ್ನು ತೋರಿಸಿಕೊಡುತ್ತಾನೆ.

مَّا جَعَلَ ٱللَّهُ لِرَجُلٖ مِّن قَلۡبَيۡنِ فِي جَوۡفِهِۦۚ
وَمَا جَعَلَ أَزۡوَٰجَكُمُ ٱلَّٰٓـِٔي تُظَٰهِرُونَ مِنۡهُنَّ
أُمَّهَٰتِكُمۡۚ وَمَا جَعَلَ أَدۡعِيَآءَكُمۡ أَبۡنَآءَكُمۡۚ
ذَٰلِكُمۡ قَوۡلُكُم بِأَفۡوَٰهِكُمۡۖ وَٱللَّهُ يَقُولُ ٱلۡحَقَّ
وَهُوَ يَهۡدِي ٱلسَّبِيلَ ٤

5. ನೀವು ಅವರನ್ನು (ದತ್ತುಪುತ್ರರನ್ನು) ಅವರ ತಂದೆಯ ಹೆಸರಿಗೆ ಸೇರಿಸಿ ಕರೆಯಿರಿ. ಅದು ಅಲ್ಲಾಹನ ಬಳಿ ಅತ್ಯಂತ ನ್ಯಾಯಯುತವಾಗಿದೆ. ನಿಮಗೆ ಅವರ ತಂದೆ ಯಾರೆಂದು

ٱدۡعُوهُمۡ لِأٓبَآئِهِمۡ هُوَ أَقۡسَطُ عِندَ ٱللَّهِۚ فَإِن
لَّمۡ تَعۡلَمُوٓاْ ءَابَآءَهُمۡ فَإِخۡوَٰنُكُمۡ فِي ٱلدِّينِ

---

[1] ಕಪಟವಿಶ್ವಾಸಿಗಳಲ್ಲಿ ಕೆಲವರು ಹೇಳುತ್ತಿದ್ದರು: "ನಮಗೆ ಎರಡು ಹೃದಯಗಳಿವೆ. ಒಂದು ಹೃದಯದಲ್ಲಿ ಮುಸಲ್ಮಾನರ ಬಗ್ಗೆ ಪ್ರೀತಿಯಿದೆ ಮತ್ತು ಇನ್ನೊಂದು ಹೃದಯದಲ್ಲಿ ಸತ್ಯನಿಷೇಧಿಗಳ ಬಗ್ಗೆ ಪ್ರೀತಿಯಿದೆ." ಆದರೆ ಅಲ್ಲಾಹು ಇದನ್ನು ನಿರಾಕರಿಸಿ, ಮನುಷ್ಯನಿಗೆ ಇರುವುದು ಒಂದೇ ಹೃದಯ. ಆ ಹೃದಯದಲ್ಲಿ ಅಲ್ಲಾಹನಲ್ಲಿರುವ ಪ್ರೀತಿ ಮತ್ತು ಅಲ್ಲಾಹನ ವೈರಿಗಳಲ್ಲಿರುವ ಪ್ರೀತಿ ಒಟ್ಟಿಗೆ ಇರಲು ಸಾಧ್ಯವಿಲ್ಲ ಎಂದು ಹೇಳುತ್ತಿದ್ದಾನೆ.

[2] ಝಿಹಾರ್ ಎಂದರೆ ಹೆಂಡತಿಯನ್ನು "ನೀನು ನನಗೆ ನನ್ನ ತಾಯಿ ಸಮಾನ" ಎಂದು ಹೇಳಿ ಆಕೆಯೊಂದಿಗೆ ಲೈಂಗಿಕ ಸಂಬಂಧವನ್ನು ಕಡಿದುಕೊಳ್ಳುವುದು. ಆದರೆ ಇದು ವಿಚ್ಛೇದನವಲ್ಲ. ಆದ್ದರಿಂದ ಹೆಂಡತಿಗೆ ಅತ್ತ ಗಂಡನೊಂದಿಗೆ ಬದುಕಲೂ ಆಗದೆ ಇತ್ತ ಬೇರೊಬ್ಬನನ್ನು ವಿವಾಹವಾಗಲೂ ಆಗದೆ ಅಡಕತ್ತರಿಯಲ್ಲಿ ಸಿಲುಕಿದ ಪರಿಸ್ಥಿತಿಯನ್ನು ಅನುಭವಿಸಬೇಕಾಗಿ ಬರುತ್ತಿತ್ತು. ಇಸ್ಲಾಮಿ ಪೂರ್ವ ಕಾಲದಲ್ಲಿ ವ್ಯಾಪಕವಾಗಿದ್ದ ಇಂತಹ ಅನೇಕ ಮಹಿಳಾ ವಿರೋಧಿ ಸಂಪ್ರದಾಯಗಳನ್ನು ಇಸ್ಲಾಂ ಕೊನೆಗೊಳಿಸಿತು.

[3] ಮಕ್ಕಳನ್ನು ದತ್ತು ಪಡೆಯುವುದನ್ನು ಇಸ್ಲಾಂ ವಿರೋಧಿಸುವುದಿಲ್ಲ. ಆದರೆ ದತ್ತು ಪಡೆದ ಮಕ್ಕಳು ದತ್ತು ಪುತ್ರರಾಗಿರುತ್ತಾರೆಯೇ ವಿನಾ ದತ್ತು ಪಡೆದವನ ಸ್ವಂತ ಮಕ್ಕಳ ಸ್ಥಾನಮಾನಕ್ಕೇರುವುದಿಲ್ಲ. ದತ್ತು ಪಡೆದ ವ್ಯಕ್ತಿ ಕೇವಲ ಸಂರಕ್ಷಕನಾಗುತ್ತಾನೆಯೇ ಹೊರತು ನೈಜ ತಂದೆಯಾಗುವುದಿಲ್ಲ.

ಗೊತ್ತಿಲ್ಲದಿದ್ದರೆ ಅವರು ನಿಮ್ಮ ಧಾರ್ಮಿಕ ಸಹೋದರರು ಮತ್ತು ಮಿತ್ರರಾಗಿದ್ದಾರೆ. ನೀವು ಪ್ರಮಾದದಿಂದ ಏನಾದರೂ ತಪ್ಪುಗಳನ್ನು ಮಾಡಿದರೆ ಅದರಿಂದ ನಿಮಗೆ ದೋಷವಿಲ್ಲ. ಆದರೆ ನೀವು ಉದ್ದೇಶಪೂರ್ವಕ ಮಾಡುವ ತಪ್ಪುಗಳಿಗೆ ಶಿಕ್ಷೆಯಿದೆ. ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

وَمَوَٰلِيكُمْۚ وَلَيْسَ عَلَيْكُمْ جُنَاحٌ فِيمَآ
أَخْطَأْتُم بِهِۦ وَلَٰكِن مَّا تَعَمَّدَتْ قُلُوبُكُمْۚ
وَكَانَ ٱللَّهُ غَفُورًا رَّحِيمًا ﴿٥﴾

---

6. ಸತ್ಯವಿಶ್ವಾಸಿಗಳಿಗೆ ಸ್ವಯಂ ಅವರಿಗಿಂತಲೂ ಹೆಚ್ಚು ಪ್ರವಾದಿಯವರು ಆಪ್ತರಾಗಿದ್ದಾರೆ.[1] ಅವರ ಪತ್ನಿಯರು ಸತ್ಯ-ವಿಶ್ವಾಸಿಗಳ ಮಾತೆಯರಾಗಿದ್ದಾರೆ.[2] ಅಲ್ಲಾಹನ ಗ್ರಂಥದಲ್ಲಿ ಇತರ ಸತ್ಯವಿಶ್ವಾಸಿಗಳು ಮತ್ತು ಮುಹಾಜಿರರಿಗಿಂತಲೂ ಹೆಚ್ಚು ರಕ್ತ ಸಂಬಂಧಿಗಳು ಪರಸ್ಪರ ಆಪ್ತರಾಗಿದ್ದಾರೆ.[3] ಆದರೆ ನೀವು ನಿಮ್ಮ ಮಿತ್ರರೊಡನೆ ಉತ್ತಮವಾಗಿ ವರ್ತಿಸುವುದು ಇದರಿಂದ ಹೊರತಾಗಿದೆ. ಅದು ಗ್ರಂಥದಲ್ಲಿ ದಾಖಲಿಸಲಾದ ನಿಯಮವಾಗಿದೆ.

ٱلنَّبِيُّ أَوْلَىٰ بِٱلْمُؤْمِنِينَ مِنْ أَنفُسِهِمْۖ وَأَزْوَٰجُهُۥٓ
أُمَّهَٰتُهُمْۗ وَأُو۟لُوا۟ ٱلْأَرْحَامِ بَعْضُهُمْ أَوْلَىٰ بِبَعْضٍ
فِى كِتَٰبِ ٱللَّهِ مِنَ ٱلْمُؤْمِنِينَ وَٱلْمُهَٰجِرِينَ إِلَّآ
أَن تَفْعَلُوٓا۟ إِلَىٰٓ أَوْلِيَآئِكُم مَّعْرُوفًاۚ كَانَ ذَٰلِكَ
فِى ٱلْكِتَٰبِ مَسْطُورًا ﴿٦﴾

---

7. ನಾವು ಪ್ರವಾದಿಗಳಿಂದ ಕರಾರು ಪಡೆದ ಸಂದರ್ಭ. ನಿಮ್ಮಿಂದ ಮತ್ತು ನೂಹ್, ಇಬ್ರಾಹೀಮ್, ಮೂಸಾ ಹಾಗೂ ಮರ್ಯಮರ ಪುತ್ರ ಈಸಾರಿಂದ. ನಾವು ಅವರೆಲ್ಲರಿಂದ ಬಲಿಷ್ಠವಾದ ಕರಾರನ್ನು ಪಡೆದೆವು.

وَإِذْ أَخَذْنَا مِنَ ٱلنَّبِيِّـۧنَ مِيثَٰقَهُمْ وَمِنكَ وَمِن
نُّوحٍ وَإِبْرَٰهِيمَ وَمُوسَىٰ وَعِيسَى ٱبْنِ مَرْيَمَۖ
وَأَخَذْنَا مِنْهُم مِّيثَٰقًا غَلِيظًا ﴿٧﴾

---

8. ಸತ್ಯವಂತರೊಡನೆ ಅವರ ಸತ್ಯದ ಬಗ್ಗೆ ಪ್ರಶ್ನಿಸಲು. ಅವನು ಸತ್ಯನಿ-ಷೇಧಿಗಳಿಗೆ ಯಾತನಾಮಯ ಶಿಕ್ಷೆಯನ್ನು ಸಿದ್ಧಗೊಳಿಸಿದ್ದಾನೆ.

لِّيَسْـَٔلَ ٱلصَّٰدِقِينَ عَن صِدْقِهِمْۚ وَأَعَدَّ
لِلْكَٰفِرِينَ عَذَابًا أَلِيمًا ﴿٨﴾

---

9. ಓ ಸತ್ಯವಿಶ್ವಾಸಿಗಳೇ! ಅಲ್ಲಾಹು ನಿಮಗೆ ತೋರಿದ ಅನುಗ್ರಹವನ್ನು ಸ್ಮರಿಸಿರಿ. ಆ ಸೈನ್ಯಗಳು ನಿಮ್ಮ ಬಳಿಗೆ ಬಂದಾಗ, ನಾವು ಅವರ ವಿರುದ್ಧ ಬಿರುಗಾಳಿಯನ್ನು ಮತ್ತು ನಿಮಗೆ ಕಾಣದಂತಹ

يَٰٓأَيُّهَا ٱلَّذِينَ ءَامَنُوا۟ ٱذْكُرُوا۟ نِعْمَةَ ٱللَّهِ
عَلَيْكُمْ إِذْ جَآءَتْكُمْ جُنُودٌ فَأَرْسَلْنَا
عَلَيْهِمْ رِيحًا وَجُنُودًا لَّمْ تَرَوْهَاۚ وَكَانَ ٱللَّهُ بِمَا

---

[1] ಪ್ರವಾದಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರವರು ಸತ್ಯವಿಶ್ವಾಸಿಗಳ ಹಿತಚಿಂತಕರಾಗಿದ್ದಾರೆ. ಸತ್ಯವಿಶ್ವಾ-ಸಿಗಳು ಅಭ್ಯುದಯ ಹೊಂದಬೇಕು ಮತ್ತು ಸ್ವರ್ಗ ಪ್ರವೇಶ ಮಾಡಬೇಕು ಎಂಬುದೇ ಅವರ ಪರಮೋಚ್ಛ ಗುರಿಯಾಗಿದೆ. ಅದಕ್ಕಾಗಿ ಅವರು ಅಹೋರಾತ್ರಿ ನಿರಂತರ ಪರಿಶ್ರಮಿಸುತ್ತಾರೆ. ಆದ್ದರಿಂದ ಸತ್ಯವಿಶ್ವಾಸಿಗಳು ಕೂಡ ಅವರನ್ನು ಅತಿಯಾಗಿ ಪ್ರೀತಿಸಬೇಕು. ಅವರಿಗಾಗಿ ಯಾವುದೇ ತ್ಯಾಗವನ್ನು ಮಾಡಲು ಸಿದ್ಧರಾಗಬೇಕು. ಇತರೆಲ್ಲರಿಗಿಂತ ಹೆಚ್ಚು ಅವರನ್ನು ಪ್ರೀತಿಸಬೇಕು. ಅವರ ಆಜ್ಞೆಗಳನ್ನು ಪಾಲಿಸುವುದರಲ್ಲಿ ಸ್ವಲ್ಪವೂ ಹಿಂಜರಿಯಬಾರದು.

[2] ಅಂದರೆ ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ನಂತರ ಅವರ ಪತ್ನಿಯರನ್ನು ವಿವಾಹವಾಗುವ ಅನುಮತಿ ಯಾರಿಗೂ ಇಲ್ಲ. ಏಕೆಂದರೆ, ಅವರು ಗೌರವಾನ್ವಿತ ಸ್ಥಾನದಲ್ಲಿರುವವರು. ಅವರು ಸತ್ಯವಿಶ್ವಾಸಿ ಪುರುಷರಿಗೂ, ಮಹಿಳೆಯರಿಗೂ ತಾಯಂದಿರಾಗಿದ್ದಾರೆ.

[3] ಮುಹಾಜಿರರು (ಮಕ್ಕಾದಿಂದ ಹಿಜ್ರ ಮಾಡಿದ ಮುಸ್ಲಿಮರು) ಮದೀನಕ್ಕೆ ವಲಸೆ ಬಂದ ಆರಂಭಕಾಲದಲ್ಲಿ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಒಬ್ಬ ಮುಹಾಜಿರ್ ಮತ್ತು ಒಬ್ಬ ಅನ್ಸಾರ್ (ಮದೀನ ನಿವಾಸಿ ಮುಸ್ಲಿಂ) ನಡುವೆ ವಿಶೇಷ ಸಾಹೋದ-ರತೆಯನ್ನು ಸ್ಥಾಪಿಸಿದ್ದರು. ಅನ್ಸಾರರು ತಮ್ಮ ಆಸ್ತಿಯಲ್ಲಿ ಮುಹಾಜಿರರಿಗೆ ಹಕ್ಕನ್ನು ನೀಡುತ್ತಿದ್ದರು. ಆದರೆ ವಾರಸು ನಿಯಮಗಳನ್ನು ವಿವರಿಸುವ ವಚನಗಳು ಅವತೀರ್ಣವಾದ ನಂತರ ವಾರೀಸು ಹಕ್ಕನ್ನು ಕೇವಲ ಸಂಬಂಧಿಕರಿಗೆ ಮಾತ್ರ ಸೀಮಿತಗೊಳಿಸಲಾಯಿತು.

ಸೈನ್ಯಗಳನ್ನು ಕಳುಹಿಸಿದ ಸಂದರ್ಭ.[1] ಅಲ್ಲಾಹು ನೀವು ಮಾಡುತ್ತಿರುವ ಕರ್ಮಗಳನ್ನು ನೋಡುತ್ತಿದ್ದಾನೆ.

تَعۡمَلُونَ بَصِيرًا ٩

---

10. ಅವರು ನಿಮ್ಮ ಮೇಲ್ಭಾಗದಿಂದ ಮತ್ತು ನಿಮ್ಮ ತಳಭಾಗದಿಂದ ನಿಮ್ಮ ಬಳಿಗೆ ಬಂದ ಸಂದರ್ಭ. ಕಣ್ಣುಗಳು ಸ್ತಬ್ಧವಾದ ಮತ್ತು ಹೃದಯಗಳು ಗಂಟಲಿಗೆ ತಲುಪಿದ ಸಂದರ್ಭ. ಆಗ ನೀವು ಅಲ್ಲಾಹನ ಬಗ್ಗೆ ತಪ್ಪುಕಲ್ಪನೆಗಳನ್ನು ಕಲ್ಪಿಸುತ್ತಿದ್ದಿರಿ.

إِذۡ جَآءُوكُم مِّن فَوۡقِكُمۡ وَمِنۡ أَسۡفَلَ مِنكُمۡ
وَإِذۡ زَاغَتِ ٱلۡأَبۡصَٰرُ وَبَلَغَتِ ٱلۡقُلُوبُ ٱلۡحَنَاجِرَ
وَتَظُنُّونَ بِٱللَّهِ ٱلظُّنُونَا۠ ١٠

---

11. ಅಲ್ಲಿ ಸತ್ಯವಿಶ್ವಾಸಿಗಳನ್ನು ಪರೀಕ್ಷಿಸಲಾಯಿತು ಮತ್ತು ಅತ್ಯಂತ ಪ್ರಬಲವಾಗಿ ನಡುಗಿಸಲಾಯಿತು.

هُنَالِكَ ٱبۡتُلِيَ ٱلۡمُؤۡمِنُونَ وَزُلۡزِلُواْ زِلۡزَالٗا
شَدِيدٗا ١١

---

12. ಕಪಟವಿಶ್ವಾಸಿಗಳು ಮತ್ತು ಹೃದಯಗಳಲ್ಲಿ ರೋಗವಿರುವವರು ಹೇಳುತ್ತಿದ್ದರು: "ಅಲ್ಲಾಹು ಮತ್ತು ಅವನ ಸಂದೇಶವಾಹಕರು ನಮಗೆ ವಾಗ್ದಾನ ಮಾಡಿದ್ದೆಲ್ಲವೂ ವಂಚನೆ ಮತ್ತು ದ್ರೋಹವಾಗಿದೆ."

وَإِذۡ يَقُولُ ٱلۡمُنَٰفِقُونَ وَٱلَّذِينَ فِي قُلُوبِهِم مَّرَضٞ
مَّا وَعَدَنَا ٱللَّهُ وَرَسُولُهُۥٓ إِلَّا غُرُورٗا ١٢

---

13. ಅವರಲ್ಲಿ (ಕಪಟವಿಶ್ವಾಸಿಗಳಲ್ಲಿ) ಒಂದು ಗುಂಪು ಜನರು ಹೇಳಿದ ಸಂದರ್ಭ: "ಯಸ್ರಿಬಿನ[2] ಜನರೇ! ನಿಮಗೆ ಇಲ್ಲಿ ಯಾವುದೇ ಸ್ಥಾನವಿಲ್ಲ. ಇಲ್ಲಿಂದ ಮರಳಿ ಹೋಗಿ." ಅವರಲ್ಲಿ ಇನ್ನೊಂದು ಗುಂಪು ಪ್ರವಾದಿಯ ಬಳಿಗೆ ಬಂದು (ಯುದ್ಧರಂಗದಿಂದ ಪಲಾಯನ ಮಾಡಲು) ಅನುಮತಿ ಕೇಳುತ್ತಾ ಹೇಳಿದರು: "ನಮ್ಮ ಮನೆಗಳು ಭದ್ರವಾಗಿಲ್ಲ." ವಾಸ್ತವದಲ್ಲಿ ಅವರ ಮನೆಗಳು ಭದ್ರವಾಗಿದ್ದವು. ಅವರು ಪಲಾಯನ ಮಾಡಲು ಮಾತ್ರ ಬಯಸುತ್ತಿದ್ದರು.

وَإِذۡ قَالَت طَّآئِفَةٞ مِّنۡهُمۡ يَٰٓأَهۡلَ يَثۡرِبَ لَا مُقَامَ
لَكُمۡ فَٱرۡجِعُواْۚ وَيَسۡتَـٔۡذِنُ فَرِيقٞ مِّنۡهُمُ ٱلنَّبِيَّ
يَقُولُونَ إِنَّ بُيُوتَنَا عَوۡرَةٞ وَمَا هِيَ بِعَوۡرَةٍۖ إِن
يُرِيدُونَ إِلَّا فِرَارٗا ١٣

---

14. ಮದೀನದ ಎಲ್ಲಾ ದಿಕ್ಕುಗಳಿಂದಲೂ ವೈರಿಗಳು ಅವರ (ಕಪಟವಿಶ್ವಾಸಿಗಳ) ಬಳಿಗೆ ಬಂದು, ನಂತರ ಅವರೊಡನೆ ಧರ್ಮಪರಿತ್ಯಾಗ ಮಾಡಬೇಕೆಂದು ಬೇಡಿಕೆಯಿಟ್ಟರೆ, ಅವರು ಅದನ್ನು ಈಡೇರಿಸುವರು. ಸ್ವಲ್ಪವೇ ಹೊರತು ಅವರು ಅದರಿಂದ ಹಿಂಜರಿಯುವುದಿಲ್ಲ.

وَلَوۡ دُخِلَتۡ عَلَيۡهِم مِّنۡ أَقۡطَارِهَا ثُمَّ سُئِلُواْ
ٱلۡفِتۡنَةَ لَأٓتَوۡهَا وَمَا تَلَبَّثُواْ بِهَآ إِلَّا يَسِيرٗا ١٤

---

15. ನಾವು ಯುದ್ಧರಂಗದಿಂದ ಪಲಾಯನ ಮಾಡುವುದಿಲ್ಲ

وَلَقَدۡ كَانُواْ عَٰهَدُواْ ٱللَّهَ مِن قَبۡلُ لَا يُوَلُّونَ

---

[1] ಹಿಜ್ರ 5ನೇ ವರ್ಷದಲ್ಲಿ ಮಕ್ಕಾದ ಕುರೈಶರು ಮತ್ತು ಅವರ ಮೈತ್ರಿ ಮಾಡಿಕೊಂಡ ಗೋತ್ರಗಳು ಸೇರಿ ಸುಮಾರು 10,000 ಸಂಖ್ಯೆಯ ಬೃಹತ್ ಸೈನ್ಯದೊಂದಿಗೆ ಅವರು ಮದೀನದ ಮೇಲೆ ದಂಡೆತ್ತಿ ಬಂದರು. ಈ ಯುದ್ಧವನ್ನು ಅಹ್ಝಾಬ್ ಯುದ್ಧ ಅಥವಾ ಖಂದಕ್ ಯುದ್ಧ ಎಂದು ಕರೆಯಲಾಗುತ್ತದೆ. ವೈರಿಗಳು ಮದೀನ ಪ್ರವೇಶಿಸದಂತೆ ಮುಸಲ್ಮಾನರು ಮದೀನದ ಸುತ್ತಲು ಹೊಂಡ ತೋಡಿದರು. ವೈರಿಗಳು ಮದೀನ ಪ್ರವೇಶಿಸಲಾಗದೆ ಅದರ ಹೊರವಲಯದಲ್ಲಿ ಬೀಡು ಬಿಟ್ಟು ಸುಮಾರು ಒಂದು ತಿಂಗಳ ಕಾಲ ಮದೀನಕ್ಕೆ ದಿಗ್ಬಂಧನ ಹಾಕಿದರು. ಕೊನೆಗೆ ಒಂದು ರಾತ್ರಿ ತೀವ್ರ ಸ್ವರೂಪದ ಬಿರುಗಾಳಿ ಬೀಸಿ ಅವರ ಡೇರೆಗಳೆಲ್ಲವೂ ಹಾರಿಹೋದವು. ಗಾಳಿಮಳೆಯಿಂದ ಅವರು ಅಲ್ಲಿ ಉಳಿಯಲು ಸಾಧ್ಯವಾಗದೆ ಎಲ್ಲರೂ ಅಲ್ಲಿಂದ ಪಲಾಯನ ಮಾಡಿದರು.

[2] ಯಸ್ರಿಬ್ ಮದೀನದ ಹಿಂದಿನ ಹೆಸರು.

ٱلۡأَدۡبَٰرَۚ وَكَانَ عَهۡدُ ٱللَّهِ مَسۡـُٔولٗا ١٥

ಎಂದು ಅವರು ಇದಕ್ಕೆ ಮೊದಲು ಅಲ್ಲಾಹನೊಂದಿಗೆ ಕರಾರು ಮಾಡಿದ್ದರು. ಅಲ್ಲಾಹನೊಡನೆ ಮಾಡಲಾದ ಕರಾರುಗಳನ್ನು ಖಂಡಿತ ವಿಚಾರಣೆ ಮಾಡಲಾಗುತ್ತದೆ.

---

قُل لَّن يَنفَعَكُمُ ٱلۡفِرَارُ إِن فَرَرۡتُم مِّنَ ٱلۡمَوۡتِ
أَوِ ٱلۡقَتۡلِ وَإِذٗا لَّا تُمَتَّعُونَ إِلَّا قَلِيلٗا ١٦

16. ಹೇಳಿರಿ: “ನೀವು ಸಾವಿನಿಂದ ಅಥವಾ ಕೊಲೆಯಾಗುವುದರಿಂದ ತಪ್ಪಿಸಿಕೊಳ್ಳಲು ಪಲಾಯನ ಮಾಡುವುದಾದರೆ ಆ ಪಲಾಯನವು ನಿಮಗೆ ಯಾವುದೇ ಪ್ರಯೋಜನ ನೀಡುವುದಿಲ್ಲ. ನೀವು ಹಾಗೆ ಮಾಡಿದರೂ ನಿಮಗೆ ತಾತ್ಕಾಲಿಕ ಆನಂದ ಮಾತ್ರ ನೀಡಲಾಗುತ್ತದೆ.”

---

قُلۡ مَن ذَا ٱلَّذِي يَعۡصِمُكُم مِّنَ ٱللَّهِ إِنۡ أَرَادَ
بِكُمۡ سُوٓءًا أَوۡ أَرَادَ بِكُمۡ رَحۡمَةٗۚ وَلَا يَجِدُونَ
لَهُم مِّن دُونِ ٱللَّهِ وَلِيّٗا وَلَا نَصِيرٗا ١٧

17. ಹೇಳಿರಿ: “ಅಲ್ಲಾಹು ನಿಮಗೇನಾದರೂ ತೊಂದರೆ ಮಾಡಲು ಬಯಸಿದರೆ, ಅಥವಾ ನಿಮಗೆ ದಯೆ ತೋರಲು ಬಯಸಿದರೆ, ಅಲ್ಲಾಹನಿಂದ ನಿಮ್ಮನ್ನು ರಕ್ಷಿಸುವವನು ಯಾರು? ಅವರು ಅಲ್ಲಾಹನ ಹೊರತು ಬೇರೆ ರಕ್ಷಕನನ್ನು ಅಥವಾ ಸಹಾಯಕನನ್ನು ಕಾಣಲಾರರು.

---

قَدۡ يَعۡلَمُ ٱللَّهُ ٱلۡمُعَوِّقِينَ مِنكُمۡ وَٱلۡقَآئِلِينَ
لِإِخۡوَٰنِهِمۡ هَلُمَّ إِلَيۡنَاۖ وَلَا يَأۡتُونَ ٱلۡبَأۡسَ إِلَّا
قَلِيلًا ١٨

18. ನಿಮ್ಮಲ್ಲಿ ಇತರ ಜನರನ್ನು ತಡೆಯುವವರು, ತಮ್ಮ ಸಹೋದರರೊಡನೆ “ನಮ್ಮ ಬಳಿ ಬನ್ನಿ” ಎಂದು ಹೇಳುವವರು ಮತ್ತು ಅಪರೂಪವಾಗಿ ಮಾತ್ರ ಯುದ್ಧಕ್ಕೆ ಹೋಗುವವರು ಯಾರೆಂದು ಅಲ್ಲಾಹನಿಗೆ ತಿಳಿದಿದೆ.

---

أَشِحَّةً عَلَيۡكُمۡۖ فَإِذَا جَآءَ ٱلۡخَوۡفُ رَأَيۡتَهُمۡ
يَنظُرُونَ إِلَيۡكَ تَدُورُ أَعۡيُنُهُمۡ كَٱلَّذِي يُغۡشَىٰ
عَلَيۡهِ مِنَ ٱلۡمَوۡتِۖ فَإِذَا ذَهَبَ ٱلۡخَوۡفُ سَلَقُوكُم
بِأَلۡسِنَةٍ حِدَادٍ أَشِحَّةً عَلَى ٱلۡخَيۡرِۚ أُوْلَٰٓئِكَ لَمۡ
يُؤۡمِنُواْ فَأَحۡبَطَ ٱللَّهُ أَعۡمَٰلَهُمۡۚ وَكَانَ ذَٰلِكَ عَلَى
ٱللَّهِ يَسِيرٗا ١٩

19. ಅವರು ನಿಮಗೆ ಸಹಾಯ ಮಾಡುವುದರಲ್ಲಿ ಅತ್ಯಂತ ಜಿಪುಣರಾಗಿದ್ದಾರೆ. ಭಯದ ಸನ್ನಿವೇಶವುಂಟಾದರೆ ಅವರು ನಿಮ್ಮನ್ನು ದಿಟ್ಟಿಸಿ ನೋಡುವುದ್ನು ನಿಮಗೆ ಕಾಣಬಹುದು. ಸಾವಿನ ದವಡೆಯಲ್ಲಿರುವ ವ್ಯಕ್ತಿಯ ಕಣ್ಣುಗಳಂತೆ ಅವರ ಕಣ್ಣುಗಳು ತಿರುಗುತ್ತವೆ. ಆದರೆ ಭಯವು ನಿವಾರಣೆಯಾದರೆ ಅವರು ಹರಿತವಾದ ನಾಲಗೆಗಳ ಮೂಲಕ ನಿಮ್ಮನ್ನು ಚುಚ್ಚಿ ಮಾತನಾಡುತ್ತಾರೆ. ಅವರು ಸಂಪತ್ತನ್ನು ಅತಿಯಾಗಿ ಆಸೆಪಡುತ್ತಾರೆ. ಅವರು ಸತ್ಯವಿಶ್ವಾಸಿಗಳಲ್ಲ. ಆದ್ದರಿಂದ ಅಲ್ಲಾಹು ಅವರ ಕರ್ಮಗಳನ್ನು ನಿಷ್ಫಲಗೊಳಿಸಿದನು. ಅದು ಅಲ್ಲಾಹನ ಮಟ್ಟಿಗೆ ಬಹಳ ಸುಲಭವಾಗಿದೆ.

---

يَحۡسَبُونَ ٱلۡأَحۡزَابَ لَمۡ يَذۡهَبُواْۖ وَإِن يَأۡتِ
ٱلۡأَحۡزَابُ يَوَدُّواْ لَوۡ أَنَّهُم بَادُونَ فِي ٱلۡأَعۡرَابِ
يَسۡـَٔلُونَ عَنۡ أَنۢبَآئِكُمۡۖ وَلَوۡ كَانُواْ فِيكُم مَّا
قَٰتَلُوٓاْ إِلَّا قَلِيلٗا ٢٠

20. ಮಿತ್ರಪಡೆಗಳು (ವೈರಿಗಳು) ಓಡಿಹೋಗಿರಲಿಕ್ಕಿಲ್ಲ ಎಂದು ಅವರು (ಕಪಟವಿಶ್ವಾಸಿಗಳು) ಭಾವಿಸುತ್ತಾರೆ. ಮಿತ್ರಪಡೆಗಳೇ-ನಾದರೂ ಪುನಃ ಬಂದರೆ, ಗ್ರಾಮೀಣ ಅರಬ್ಬರೊಂದಿಗೆ ಸೇರಿ ಮರುಭೂಮಿಗೆ ಹೋಗಿ ಅಲ್ಲಿ ನಿಮ್ಮ ಬಗ್ಗೆ ಮಾಹಿತಿ ಕಲೆ ಹಾಕುತ್ತಾ ಬದುಕುತ್ತಿದ್ದರೆ ಎಷ್ಟು ಚೆನ್ನಾಗಿತ್ತು ಎಂದು ಅವರು ಚಿಂತಿಸುತ್ತಾರೆ.

ಇನ್ನು ಅವರು ನಿಮ್ಮ ಜೊತೆ (ಮದೀನದಲ್ಲಿ) ಇದ್ದರೂ ಅವರು ಸ್ವಲ್ಪ ಮಾತ್ರ ಯುದ್ಧ ಮಾಡುವರು.

لَّقَدْ كَانَ لَكُمْ فِي رَسُولِ ٱللَّهِ أُسْوَةٌ حَسَنَةٌ لِّمَن كَانَ يَرْجُواْ ٱللَّهَ وَٱلْيَوْمَ ٱلْـَٔاخِرَ وَذَكَرَ ٱللَّهَ كَثِيرًا ﴿٢١﴾

21. ನಿಮಗೆ ಅಲ್ಲಾಹನ ಸಂದೇಶವಾಹಕರಲ್ಲಿ ಅತ್ಯುತ್ತಮ ಮಾದರಿಯಿದೆ. ಅಲ್ಲಾಹನನ್ನು ಮತ್ತು ಅಂತ್ಯದಿನವನ್ನು ನಿರೀಕ್ಷಿಸು-ವವರಿಗೆ ಹಾಗೂ ಅಲ್ಲಾಹನನ್ನು ಅತ್ಯಧಿಕವಾಗಿ ಸ್ಮರಿಸುವವರಿಗೆ.

وَلَمَّا رَءَا ٱلْمُؤْمِنُونَ ٱلْأَحْزَابَ قَالُواْ هَـٰذَا مَا وَعَدَنَا ٱللَّهُ وَرَسُولُهُۥ وَصَدَقَ ٱللَّهُ وَرَسُولُهُۥ ۚ وَمَا زَادَهُمْ إِلَّآ إِيمَـٰنًا وَتَسْلِيمًا ﴿٢٢﴾

22. ಸತ್ಯವಿಶ್ವಾಸಿಗಳು ಮಿತ್ರಪಡೆಗಳನ್ನು ಕಂಡಾಗ ಹೇಳಿದರು: "ಇದೇ ಅಲ್ಲಾಹು ಮತ್ತು ಅವನ ಸಂದೇಶವಾಹಕರು ನಮಗೆ ವಾಗ್ದಾನ ಮಾಡಿದ್ದು. ಅಲ್ಲಾಹು ಮತ್ತು ಅವನ ಸಂದೇಶವಾಹಕರು ಸತ್ಯವನ್ನೇ ಹೇಳಿದ್ದಾರೆ." ಅದು ಅವರಿಗೆ ವಿಶ್ವಾಸ ಮತ್ತು ಶರಣಾಗತಿಯನ್ನು ಮಾತ್ರ ಹೆಚ್ಚಿಸಿತು.

مِّنَ ٱلْمُؤْمِنِينَ رِجَالٌ صَدَقُواْ مَا عَـٰهَدُواْ ٱللَّهَ عَلَيْهِ ۖ فَمِنْهُم مَّن قَضَىٰ نَحْبَهُۥ وَمِنْهُم مَّن يَنتَظِرُ ۖ وَمَا بَدَّلُواْ تَبْدِيلًا ﴿٢٣﴾

23. ಸತ್ಯವಿಶ್ವಾಸಿಗಳಲ್ಲಿ ಕೆಲವು ಪುರುಷರಿದ್ದಾರೆ. ಅವರು ಅಲ್ಲಾಹನೊಡನೆ ಮಾಡಿದ ಕರಾರನ್ನು ರುಜುವಾತುಪಡಿಸಿ-ದ್ದಾರೆ. ಅವರಲ್ಲಿ ಕೆಲವರು (ಹುತಾತ್ಮರಾಗುವ ಮೂಲಕ) ತಮ್ಮ ಕರಾರನ್ನು ನೆರವೇರಿಸಿದರು. ಅವರಲ್ಲಿ ಕೆಲವರು ಅದನ್ನು ನಿರೀ-ಕ್ಷಿಸುತ್ತಿದ್ದಾರೆ. ಅವರು ಅದರಲ್ಲಿ ಯಾವುದೇ ಬದಲಾವಣೆ ಮಾಡಲಿಲ್ಲ.

لِّيَجْزِىَ ٱللَّهُ ٱلصَّـٰدِقِينَ بِصِدْقِهِمْ وَيُعَذِّبَ ٱلْمُنَـٰفِقِينَ إِن شَآءَ أَوْ يَتُوبَ عَلَيْهِمْ ۚ إِنَّ ٱللَّهَ كَانَ غَفُورًا رَّحِيمًا ﴿٢٤﴾

24. ಅಲ್ಲಾಹು ಸತ್ಯವಂತರಿಗೆ ಅವರ ಸತ್ಯದ ಪ್ರತಿಫಲವನ್ನು ನೀಡುವುದಕ್ಕಾಗಿ ಮತ್ತು ಅವನು ಬಯಸಿದರೆ ಕಪಟವಿಶ್ವಾಸಿಗ-ಳನ್ನು ಶಿಕ್ಷಿಸುವುದಕ್ಕಾಗಿ ಅಥವಾ ಅವರ ಪಶ್ಚಾತ್ತಾಪವನ್ನು ಸ್ವೀಕ-ರಿಸುವುದಕ್ಕಾಗಿ. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

وَرَدَّ ٱللَّهُ ٱلَّذِينَ كَفَرُواْ بِغَيْظِهِمْ لَمْ يَنَالُواْ خَيْرًا ۚ وَكَفَى ٱللَّهُ ٱلْمُؤْمِنِينَ ٱلْقِتَالَ ۚ وَكَانَ ٱللَّهُ قَوِيًّا عَزِيزًا ﴿٢٥﴾

25. ಅಲ್ಲಾಹು ಸತ್ಯನಿಷೇಧಿಗಳನ್ನು ಅವರ ರೋಷದೊಂದಿಗೇ ಮರಳಿ ಕಳುಹಿಸಿದನು. ಅವರು ಯಾವುದೇ ಲಾಭವನ್ನು ಪಡೆಯಲಿಲ್ಲ. ಯುದ್ಧದಲ್ಲಿ ಅಲ್ಲಾಹು ಸತ್ಯವಿಶ್ವಾಸಿಗಳಿಗೆ ಪರ್ಯಾಪ್ತನಾದನು. ಅಲ್ಲಾಹು ಮಹಾ ಶಕ್ತಿಶಾಲಿ ಮತ್ತು ಪ್ರಬಲನಾಗಿದ್ದಾನೆ.

وَأَنزَلَ ٱلَّذِينَ ظَـٰهَرُوهُم مِّنْ أَهْلِ ٱلْكِتَـٰبِ مِن صَيَاصِيهِمْ وَقَذَفَ فِى قُلُوبِهِمُ ٱلرُّعْبَ فَرِيقًا تَقْتُلُونَ وَتَأْسِرُونَ فَرِيقًا ﴿٢٦﴾

26. ಸತ್ಯನಿಷೇಧಿಗಳಿಗೆ ಸಹಾಯ ಮಾಡಿದ ಗ್ರಂಥದವರನ್ನು (ಯಹೂದಿಗಳನ್ನು) ಅಲ್ಲಾಹು ಅವರ ಕೋಟೆಗಳಿಂದ ಕೆಳಗಿಳಿಸಿದನು ಮತ್ತು ಅವರ ಹೃದಯಗಳಲ್ಲಿ ಭೀತಿಯನ್ನು ಬಿತ್ತಿದನು. ಅವರಲ್ಲಿ ಒಂದು ಗುಂಪನ್ನು ನೀವು ಕೊಂದಿದ್ದೀರಿ ಮತ್ತು ಇನ್ನೊಂದು ಗುಂಪನ್ನು ಸೆರೆಹಿಡಿದಿದ್ದೀರಿ.[1]

[1] ಯಹೂದಿಗಳ ಒಂದು ಗೋತ್ರವಾದ ಬನೂ ಕುರೈಝ‌ದವರು ಮದೀನದ ಉತ್ತರ ಭಾಗದಲ್ಲಿ ವಾಸವಾಗಿದ್ದರು. ಇವರು ಮುಸ್ಲಿಮರೊಡನೆ

27. ಅಲ್ಲಾಹು ನಿಮ್ಮನ್ನು ಅವರ ಜಮೀನುಗಳ, ವಾಸ್ತವ್ಯಗಳ ಮತ್ತು ಆಸ್ತಿಗಳ ವಾರಸುದಾರರನ್ನಾಗಿ ಮಾಡಿದನು. ನಿಮ್ಮ ಪಾದಗಳು ಇನ್ನೂ ತುಳಿಯದ ಭೂಮಿಗಳಿಗೂ ಅವನು ನಿಮ್ಮನ್ನು ವಾರಸು-ದಾರರನ್ನಾಗಿ ಮಾಡಿದನು. ಅಲ್ಲಾಹು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

وَأَوۡرَثَكُمۡ أَرۡضَهُمۡ وَدِيَٰرَهُمۡ وَأَمۡوَٰلَهُمۡ وَأَرۡضٗا لَّمۡ تَطَـُٔوهَاۚ وَكَانَ ٱللَّهُ عَلَىٰ كُلِّ شَيۡءٖ قَدِيرٗا ٢٧

28. ಪ್ರವಾದಿಯವರೇ! ನಿಮ್ಮ ಮಡದಿಯರೊಡನೆ ಹೇಳಿರಿ: “ನೀವು ಇಹಲೋಕ ಜೀವನವನ್ನು ಮತ್ತು ಅದರ ಅಲಂಕಾರವನ್ನು ಬಯಸುವುದಾದರೆ, ಬನ್ನಿ! ನಾನು ನಿಮಗೆ ಸ್ವಲ್ಪ ಸಂಪತ್ತನ್ನು ನೀಡಿ, ಅತ್ಯುತ್ತಮ ರೀತಿಯಲ್ಲಿ ನಿಮ್ಮನ್ನು ವಿಚ್ಛೇದಿಸುವೆನು.

يَٰٓأَيُّهَا ٱلنَّبِيُّ قُل لِّأَزۡوَٰجِكَ إِن كُنتُنَّ تُرِدۡنَ ٱلۡحَيَوٰةَ ٱلدُّنۡيَا وَزِينَتَهَا فَتَعَالَيۡنَ أُمَتِّعۡكُنَّ وَأُسَرِّحۡكُنَّ سَرَاحٗا جَمِيلٗا ٢٨

29. ಆದರೆ ನೀವು ಅಲ್ಲಾಹು, ಅವನ ಸಂದೇಶವಾಹಕರು ಮತ್ತು ಪರಲೋಕ ಜೀವನವನ್ನು ಬಯಸುವುದಾದರೆ, ನಿಶ್ಚಯವಾಗಿಯೂ ನಿಮ್ಮಲ್ಲಿ ಒಳಿತು ಮಾಡುವವರಿಗೆ ಅಲ್ಲಾಹು ಮಹಾ ಪ್ರತಿಫಲವನ್ನು ಸಿದ್ಧಗೊಳಿಸಿದ್ದಾನೆ.”

وَإِن كُنتُنَّ تُرِدۡنَ ٱللَّهَ وَرَسُولَهُۥ وَٱلدَّارَ ٱلۡأٓخِرَةَ فَإِنَّ ٱللَّهَ أَعَدَّ لِلۡمُحۡسِنَٰتِ مِنكُنَّ أَجۡرًا عَظِيمٗا ٢٩

30. ಓ ಪ್ರವಾದಿಯ ಮಡದಿಯರೇ! ನಿಮ್ಮಲ್ಲಿ ಯಾರಾದರೂ ಬಹಿರಂಗವಾಗಿ ಅಶ್ಲೀಲ ಕೃತ್ಯವನ್ನು ಮಾಡಿದರೆ ಅವರಿಗೆ ಇಮ್ಮಡಿ ಶಿಕ್ಷೆಯನ್ನು ನೀಡಲಾಗುವುದು. ಅದು ಅಲ್ಲಾಹನಿಗೆ ಅತಿ ಸುಲಭವಾಗಿದೆ.

يَٰنِسَآءَ ٱلنَّبِيِّ مَن يَأۡتِ مِنكُنَّ بِفَٰحِشَةٖ مُّبَيِّنَةٖ يُضَٰعَفۡ لَهَا ٱلۡعَذَابُ ضِعۡفَيۡنِۚ وَكَانَ ذَٰلِكَ عَلَى ٱللَّهِ يَسِيرٗا ٣٠

31. ನಿಮ್ಮಲ್ಲಿ ಯಾರು ಅಲ್ಲಾಹನಿಗೆ ಮತ್ತು ಅವನ ಸಂದೇಶವಾಹಕರಿಗೆ ವಿನಮ್ರರಾಗಿರುತ್ತಾರೋ ಮತ್ತು ಸತ್ಕರ್ಮವೆಸಗುತ್ತಾರೋ ಅವರಿಗೆ ನಾವು ಇಮ್ಮಡಿ ಪ್ರತಿಫಲವನ್ನು ನೀಡುವೆವು. ಅವರಿಗೆ ನಾವು ಗೌರವಾನ್ವಿತ ಉಪಜೀವನವನ್ನು ಸಿದ್ಧಗೊಳಿಸಿದ್ದೇವೆ.

وَمَن يَقۡنُتۡ مِنكُنَّ لِلَّهِ وَرَسُولِهِۦ وَتَعۡمَلۡ صَٰلِحٗا نُّؤۡتِهَآ أَجۡرَهَا مَرَّتَيۡنِ وَأَعۡتَدۡنَا لَهَا رِزۡقٗا كَرِيمٗا ٣١

32. ಓ ಪ್ರವಾದಿಯ ಮಡದಿಯರೇ! ನೀವು ಇತರ ಮಹಿಳೆಯರಂತಲ್ಲ. ನೀವು ಅಲ್ಲಾಹನನ್ನು ಭಯಪಡುವುದಾದರೆ, ನೀವು ಮೃದುವಾಗಿ ಮಾತನಾಡಬೇಡಿ. ಏಕೆಂದರೆ ಅದರಿಂದ ಹೃದಯದಲ್ಲಿ ರೋಗವಿರುವವರು ನಿಮ್ಮ ಬಗ್ಗೆ ಕೆಟ್ಟ ಭಾವನೆಗಳನ್ನಿಟ್ಟುಕೊಳ್ಳ-ಬಹುದು. ನೀವು ಯೋಗ್ಯವಾದ ಮಾತುಗಳನ್ನೇ ಆಡಿರಿ.

يَٰنِسَآءَ ٱلنَّبِيِّ لَسۡتُنَّ كَأَحَدٖ مِّنَ ٱلنِّسَآءِ إِنِ ٱتَّقَيۡتُنَّۚ فَلَا تَخۡضَعۡنَ بِٱلۡقَوۡلِ فَيَطۡمَعَ ٱلَّذِي فِي قَلۡبِهِۦ مَرَضٞ وَقُلۡنَ قَوۡلٗا مَّعۡرُوفٗا ٣٢

---

ಒಪ್ಪಂದ ಮಾಡಿಕೊಂಡಿದ್ದರು. ಈ ಒಪ್ಪಂದದ ಪ್ರಕಾರ ಇವರಲ್ಲಿ ಒಬ್ಬರು ದಾಳಿಗೊಳಗಾದರೆ ಇನ್ನೊಬ್ಬರು ಸಹಾಯ ಮಾಡಬೇಕು. ಆದರೆ ಮುಸ್ಲಿಮರ ಮೇಲೆ ಸತ್ಯನಿಷೇಧಿಗಳು ದಾಳಿ ಮಾಡಿದಾಗ ಈ ಯಹೂದಿಗಳು ಒಪ್ಪಂದವನ್ನು ಮುರಿದು ಮುಸ್ಲಿಮರಿಗೆ ವಿರುದ್ಧವಾಗಿ ಸತ್ಯನಿ-ಷೇಧಿಗಳಿಗೆ ಸಹಾಯ ಮಾಡಿದರು. ಅವರು ಒಪ್ಪಂದವನ್ನು ಮುರಿದ ಕಾರಣ ಖಂದಕ್ ಯುದ್ಧದ ನಂತರ ಮುಸ್ಲಿಮರು ಅವರ ವಿರುದ್ಧ ದಂಡೆತ್ತಿ ಹೋದರು. ಅವರು ಕೋಟೆಯಲ್ಲಿ ಅವಿತುಕೊಂಡರು. ಸುಮಾರು 25 ದಿನಗಳ ನಂತರ ಅವರು ಶರಣಾಗಿ ತಮ್ಮ ವಿಷಯದಲ್ಲಿ ತೀರ್ಪು ನೀಡುವ ಹಕ್ಕನ್ನು ಸಅದ್ ಬಿನ್ ಮುಆದ್‌ಗೆ ನೀಡಿದರು. ಸಅದ್ ಬಿನ್ ಮುಆದ್ ನೀಡಿದ ತೀರ್ಪಿನಂತೆ ಅವರಲ್ಲಿನ ಗಂಡಸರನ್ನು ಹತ್ಯೆ ಮಾಡಿ ಮಹಿಳೆಯರನ್ನು ಮತ್ತು ಮಕ್ಕಳನ್ನು ಖೈದಿಗಳಾಗಿ ಮಾಡಿಕೊಳ್ಳಲಾಯಿತು.

33. ನೀವು ನಿಮ್ಮ ಮನೆಗಳಲ್ಲೇ ಇರಿ. ಹಿಂದಿನ ಅಜ್ಞಾನಕಾಲದಂತೆ ನಿಮ್ಮ ಸೌಂದರ್ಯ ಪ್ರದರ್ಶನ ಮಾಡಬೇಡಿ. ನಮಾಝನ್ನು ಸಂಸ್ಥಾಪಿಸಿರಿ ಮತ್ತು ಝಕಾತ್ ನೀಡಿರಿ. ಅಲ್ಲಾಹು ಮತ್ತು ಅವನ ಸಂದೇಶವಾಹಕರ ಆಜ್ಞಾಪಾಲನೆ ಮಾಡಿರಿ. ಓ ಪ್ರವಾದಿಯ ಮನೆಯವರೇ! ಅಲ್ಲಾಹು ನಿಮ್ಮಿಂದ ಕೊಳೆಯನ್ನು ನಿವಾರಿಸಲು ಮತ್ತು ನಿಮ್ಮನ್ನು ಸಂಪೂರ್ಣ ಶುದ್ಧೀಕರಿಸಲು ಬಯಸುತ್ತಾನೆ.

وَقَرۡنَ فِي بُيُوتِكُنَّ وَلَا تَبَرَّجۡنَ تَبَرُّجَ ٱلۡجَٰهِلِيَّةِ ٱلۡأُولَىٰۖ وَأَقِمۡنَ ٱلصَّلَوٰةَ وَءَاتِينَ ٱلزَّكَوٰةَ وَأَطِعۡنَ ٱللَّهَ وَرَسُولَهُۥٓۚ إِنَّمَا يُرِيدُ ٱللَّهُ لِيُذۡهِبَ عَنكُمُ ٱلرِّجۡسَ أَهۡلَ ٱلۡبَيۡتِ وَيُطَهِّرَكُمۡ تَطۡهِيرٗا ٣٣

34. ನಿಮಗೆ ನಿಮ್ಮ ಮನೆಗಳಲ್ಲಿ ಓದಿಕೊಡಲಾಗುವ ಅಲ್ಲಾಹನ ವಚನಗಳನ್ನು ಮತ್ತು ವಿವೇಕವನ್ನು ಸ್ಮರಿಸಿರಿ. ನಿಶ್ಚಯವಾಗಿಯೂ ಅಲ್ಲಾಹು ಅನುಕಂಪವುಳ್ಳವನು ಮತ್ತು ಸೂಕ್ಷ್ಮಜ್ಞಾನಿಯಾಗಿದ್ದಾನೆ.

وَٱذۡكُرۡنَ مَا يُتۡلَىٰ فِي بُيُوتِكُنَّ مِنۡ ءَايَٰتِ ٱللَّهِ وَٱلۡحِكۡمَةِۚ إِنَّ ٱللَّهَ كَانَ لَطِيفًا خَبِيرًا ٣٤

35. ನಿಶ್ಚಯವಾಗಿಯೂ ಮುಸಲ್ಮಾನ ಪುರುಷರು ಮತ್ತು ಮಹಿಳೆಯರು, ಸತ್ಯವಿಶ್ವಾಸಿ ಪುರುಷರು ಮತ್ತು ಮಹಿಳೆಯರು, ದೇವಭಯವುಳ್ಳ ಪುರುಷರು ಮತ್ತು ಮಹಿಳೆಯರು, ಸತ್ಯವಂತ ಪುರುಷರು ಮತ್ತು ಮಹಿಳೆಯರು, ತಾಳ್ಮೆ ವಹಿಸುವ ಪುರುಷರು ಮತ್ತು ಮಹಿಳೆಯರು, ವಿನಮ್ರತೆ ತೋರುವ ಪುರುಷರು ಮತ್ತು ಮಹಿಳೆಯರು, ದಾನಧರ್ಮ ಮಾಡುವ ಪುರುಷರು ಮತ್ತು ಮಹಿಳೆಯರು, ಉಪವಾಸ ಆಚರಿಸುವ ಪುರುಷರು ಮತ್ತು ಮಹಿಳೆಯರು, ತಮ್ಮ ಗುಹ್ಯಭಾಗಗಳನ್ನು ಸಂರಕ್ಷಿಸುವ ಪುರುಷರು ಮತ್ತು ಮಹಿಳೆಯರು, ಅಲ್ಲಾಹನನ್ನು ಅತಿಯಾಗಿ ಸ್ಮರಿಸುವ ಪುರುಷರು ಮತ್ತು ಮಹಿಳೆಯರು—ಇವರಿಗೆ ಅಲ್ಲಾಹು ಕ್ಷಮೆ ಮತ್ತು ಮಹಾ ಪ್ರತಿಫಲವನ್ನು ಸಿದ್ಧಗೊಳಿಸಿದ್ದಾನೆ.

إِنَّ ٱلۡمُسۡلِمِينَ وَٱلۡمُسۡلِمَٰتِ وَٱلۡمُؤۡمِنِينَ وَٱلۡمُؤۡمِنَٰتِ وَٱلۡقَٰنِتِينَ وَٱلۡقَٰنِتَٰتِ وَٱلصَّٰدِقِينَ وَٱلصَّٰدِقَٰتِ وَٱلصَّٰبِرِينَ وَٱلصَّٰبِرَٰتِ وَٱلۡخَٰشِعِينَ وَٱلۡخَٰشِعَٰتِ وَٱلۡمُتَصَدِّقِينَ وَٱلۡمُتَصَدِّقَٰتِ وَٱلصَّٰٓئِمِينَ وَٱلصَّٰٓئِمَٰتِ وَٱلۡحَٰفِظِينَ فُرُوجَهُمۡ وَٱلۡحَٰفِظَٰتِ وَٱلذَّٰكِرِينَ ٱللَّهَ كَثِيرٗا وَٱلذَّٰكِرَٰتِ أَعَدَّ ٱللَّهُ لَهُم مَّغۡفِرَةٗ وَأَجۡرًا عَظِيمٗا ٣٥

36. ಅಲ್ಲಾಹು ಮತ್ತು ಅವನ ಸಂದೇಶವಾಹಕರು ಯಾವುದೇ ಒಂದು ವಿಷಯವನ್ನು ತೀರ್ಮಾನಿಸಿದರೆ, ನಂತರ ಸತ್ಯವಿಶ್ವಾಸಿ ಪುರುಷರಿಗೆ ಅಥವಾ ಮಹಿಳೆಯರಿಗೆ ಅವರ ವಿಷಯಕ್ಕೆ ಸಂಬಂಧಿಸಿ ಯಾವುದೇ ಆಯ್ಕೆಯಿರುವುದಿಲ್ಲ. ಯಾರು ಅಲ್ಲಾಹು ಮತ್ತು ಅವನ ಸಂದೇಶವಾಹಕರ ಆಜ್ಞೆಗಳನ್ನು ಉಲ್ಲಂಘಿಸುತ್ತಾನೋ—ಅವನು ಅತ್ಯಂತ ಸ್ಪಷ್ಟ ದುರ್ಮಾರ್ಗಕ್ಕೆ ಸಾಗಿದ್ದಾನೆ.

وَمَا كَانَ لِمُؤۡمِنٖ وَلَا مُؤۡمِنَةٍ إِذَا قَضَى ٱللَّهُ وَرَسُولُهُۥٓ أَمۡرًا أَن يَكُونَ لَهُمُ ٱلۡخِيَرَةُ مِنۡ أَمۡرِهِمۡۗ وَمَن يَعۡصِ ٱللَّهَ وَرَسُولَهُۥ فَقَدۡ ضَلَّ ضَلَٰلٗا مُّبِينٗا ٣٦

37. (ಪ್ರವಾದಿಯವರೇ) ಅಲ್ಲಾಹು ಅನುಗ್ರಹಗಳನ್ನು ನೀಡಿದ ಮತ್ತು ನೀವು ಕೂಡ ಅನುಗ್ರಹಗಳನ್ನು ನೀಡಿದ ವ್ಯಕ್ತಿಯೊಡನೆ, "ನಿನ್ನ ಪತ್ನಿಯನ್ನು ನಿನ್ನ ಬಳಿಯೇ ಇರಿಸು ಮತ್ತು ಅಲ್ಲಾಹನನ್ನು ಭಯಪಡು" ಎಂದು ನೀವು ಹೇಳಿದ ಸಂದರ್ಭ.[1] ಅಲ್ಲಾಹು

وَإِذۡ تَقُولُ لِلَّذِيٓ أَنۡعَمَ ٱللَّهُ عَلَيۡهِ وَأَنۡعَمۡتَ عَلَيۡهِ أَمۡسِكۡ عَلَيۡكَ زَوۡجَكَ وَٱتَّقِ ٱللَّهَ وَتُخۡفِي فِي نَفۡسِكَ مَا ٱللَّهُ مُبۡدِيهِ وَتَخۡشَى ٱلنَّاسَ وَٱللَّهُ

[1] ಝೈದ್ ಬಿನ್ ಹಾರಿಸ ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಗುಲಾಮರಾಗಿದ್ದರು. ನಂತರ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅವರನ್ನು ಸ್ವತಂತ್ರಗೊಳಿಸಿ ದತ್ತುಪುತ್ರನಾಗಿ ಸ್ವೀಕರಿಸಿದರು. ತನ್ನ ಸೋದರ ಸಂಬಂಧಿ ಜಹ್‌ಶ್‌ನ ಮಗಳು ಝೈನಬರನ್ನು ಅವರಿಗೆ ವಿವಾಹ ಮಾಡಿಕೊಟ್ಟರು. ಆದರೆ ದಂಪತಿಗಳ ಮಧ್ಯೆ ಮನಸ್ತಾಪವುಂಟಾಗಿ ದಾಂಪತ್ಯದಲ್ಲಿ ಬಿರುಕು

أَحَقُّ أَن تَخْشَىٰهُۖ فَلَمَّا قَضَىٰ زَيْدٌ مِّنْهَا وَطَرًا زَوَّجْنَٰكَهَا لِكَيْ لَا يَكُونَ عَلَى ٱلْمُؤْمِنِينَ حَرَجٌ فِىٓ أَزْوَٰجِ أَدْعِيَآئِهِمْ إِذَا قَضَوْا۟ مِنْهُنَّ وَطَرًاۚ وَكَانَ أَمْرُ ٱللَّهِ مَفْعُولًا ﴿٣٧﴾

ಬಹಿರಂಗಪಡಿಸಲಿದ್ದ ಒಂದು ವಿಷಯವನ್ನು ನೀವು ನಿಮ್ಮ ಹೃದಯದಲ್ಲಿ ಮುಚ್ಚಿಟ್ಟಿರಿ. ನೀವು ಜನರನ್ನು ಭಯಪಟ್ಟಿರಿ. ಆದರೆ ನೀವು ಭಯಪಡಲು ಅಲ್ಲಾಹು ಹೆಚ್ಚು ಅರ್ಹನಾಗಿದ್ದಾನೆ. ನಂತರ ಝೈದ್ (ಪ್ರವಾದಿಯ ದತ್ತುಪುತ್ರ) ಅವಳಿಂದ ತನ್ನ ಅಗತ್ಯವನ್ನು ಪೂರೈಸಿದಾಗ, ನಾವು ಅವಳನ್ನು ನಿಮಗೆ ವಿವಾಹ ಮಾಡಿಕೊಟ್ಟೆವು.[1] ಇದೇಕೆಂದರೆ, ಸತ್ಯವಿಶ್ವಾಸಿಗಳಿಗೆ ಅವರ ದತ್ತುಪುತ್ರರ ಪತ್ನಿಯರನ್ನು ವಿವಾಹವಾಗುವ ವಿಷಯದಲ್ಲಿ ಯಾವುದೇ ಸಂಕಟವಾಗದಿರುವುದಕ್ಕಾಗಿ—ಆ ದತ್ತುಪುತ್ರರು ಅವರಿಂದ ತಮ್ಮ ಅಗತ್ಯವನ್ನು ಪೂರೈಸಿದ ಬಳಿಕ. ಅಲ್ಲಾಹನ ಆಜ್ಞೆಯು ನೆರವೇರುವಂತದ್ದೇ ಆಗಿದೆ.

---

مَّا كَانَ عَلَى ٱلنَّبِىِّ مِنْ حَرَجٍ فِيمَا فَرَضَ ٱللَّهُ لَهُۥۖ سُنَّةَ ٱللَّهِ فِى ٱلَّذِينَ خَلَوْا۟ مِن قَبْلُۚ وَكَانَ أَمْرُ ٱللَّهِ قَدَرًا مَّقْدُورًا ﴿٣٨﴾

38. ಅಲ್ಲಾಹು ಅವನ ಪ್ರವಾದಿಗೆ ಯಾವೆಲ್ಲಾ ವಿಷಯಗಳನ್ನು ನಿಶ್ಚಯಿಸಿದ್ದಾನೋ ಅದರಲ್ಲಿ ಪ್ರವಾದಿಗೆ ಯಾವುದೇ ಸಂಕಟವಾಗಬಾರದು. ಇದಕ್ಕೆ ಮೊದಲಿನ ಪ್ರವಾದಿಗಳ ಮೇಲೂ ಅಲ್ಲಾಹು ರಿವಾಜು ನಡೆಯುತ್ತಿತ್ತು. ಅಲ್ಲಾಹನ ಆಜ್ಞೆಯು ನಿಶ್ಚಯಿಸಲಾದ ತೀರ್ಮಾನವಾಗಿದೆ.

---

ٱلَّذِينَ يُبَلِّغُونَ رِسَٰلَٰتِ ٱللَّهِ وَيَخْشَوْنَهُۥ وَلَا يَخْشَوْنَ أَحَدًا إِلَّا ٱللَّهَۗ وَكَفَىٰ بِٱللَّهِ حَسِيبًا ﴿٣٩﴾

39. ಅಲ್ಲಾಹನ ಸಂದೇಶಗಳನ್ನು ತಲುಪಿಸುವವರು, ಅವನನ್ನು ಮಾತ್ರ ಭಯಪಡುವವರು ಮತ್ತು ಅಲ್ಲಾಹನನ್ನು ಬಿಟ್ಟು ಇತರ ಯಾರನ್ನೂ ಭಯಪಡದವರು. ವಿಚಾರಣೆ ಮಾಡುವವನಾಗಿ ಅಲ್ಲಾಹು ಸಾಕು.

---

مَّا كَانَ مُحَمَّدٌ أَبَآ أَحَدٍ مِّن رِّجَالِكُمْ وَلَٰكِن رَّسُولَ ٱللَّهِ وَخَاتَمَ ٱلنَّبِيِّـۧنَۗ وَكَانَ ٱللَّهُ بِكُلِّ شَىْءٍ عَلِيمًا ﴿٤٠﴾

40. ಮುಹಮ್ಮದ್ ನಿಮ್ಮ ಪುರುಷರಲ್ಲಿ ಯಾರಿಗೂ ತಂದೆಯಲ್ಲ.[2] ಆದರೆ ಅವರು ಅಲ್ಲಾಹನ ಸಂದೇಶವಾಹಕರು ಮತ್ತು ಎಲ್ಲಾ ಪ್ರವಾದಿಗಳ ಮೊಹರಾಗಿದ್ದಾರೆ.[3] ಅಲ್ಲಾಹು ಎಲ್ಲಾ ವಿಷಯಗಳ

---

ಗೋಚರಿಸಿತು. ಬಿರುಕು ಉಲ್ಬಣಿಸಿದಾಗ ಝೈದ್ ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಬಳಿಗೆ ಬಂದು ತಲಾಕ್ ನೀಡಲು ಅನುಮತಿ ಕೇಳಿದರು. ಆದರೆ ಅದು ಪ್ರವಾದಿಯವರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇಷ್ಟವಿ-ರಲಿಲ್ಲ. ಅವರು ದಾಂಪತ್ಯ ಮುಂದುವರಿಸಲು ಹೇಳಿದರು.

[1] ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ದತ್ತುಪುತ್ರ ಝೈದ್ ತನ್ನ ಪತ್ನಿ ಝೈನಬರಿಗೆ ವಿಚ್ಛೇದನ ನೀಡಿದರು. ದತ್ತುಪುತ್ರರು ವಿಚ್ಛೇದಿಸಿದ ಮಹಿಳೆಯನ್ನು ದತ್ತು ಪಡೆದವರು ವಿವಾಹವಾಗಬಾರದು ಎಂಬ ರೂಢಿ ಅರೇಬಿಯಾದಲ್ಲಿ ಅಸ್ತಿತ್ವದಲ್ಲಿತ್ತು. ಅಜ್ಞಾನಕಾಲದ ಈ ರೂಢಿಯನ್ನು ನಿರ್ಮೂಲನ ಮಾಡಲು ಅಲ್ಲಾಹನ ಆಜ್ಞೆಯಂತೆ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಝೈನಬರನ್ನು ವಿವಾಹವಾದರು.

[2] ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಝೈನಬರನ್ನು ವಿವಾಹವಾದಾಗ, ಮುಹಮ್ಮದ್ ತನ್ನ ಸೊಸೆಯನ್ನೇ ವಿವಾಹವಾಗಿದ್ದಾರೆ ಎಂದು ಸತ್ಯನಿಷೇಧಿಗಳು ಮತ್ತು ಕಪಟವಿಶ್ವಾಸಿಗಳು ಗುಲ್ಲೆಬ್ಬಿಸಿದರು. ಇದಕ್ಕೆ ಉತ್ತರವಾಗಿ ಈ ವಚನವು ಅವತೀರ್ಣವಾ-ಯಿತು. ಅಂದರೆ ಪ್ರವಾದಿಯವರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಗಂಡು ಮಕ್ಕಳಿಲ್ಲ. ನಿಮ್ಮಲ್ಲಿ ಯಾರೂ ಅವರ ಗಂಡು ಮಕ್ಕಳಲ್ಲ. ಅವರ ದತ್ತುಪುತ್ರ ಝೈದ್ ಅವರ ಸ್ವಂತ ಮಗನಲ್ಲದ್ದರಿಂದ ಝೈನಬ ಅವರ ಸೊಸೆಯಲ್ಲ.

[3] ಅಂದರೆ ಅವರು ಅಂತಿಮ ಪ್ರವಾದಿ. ಅವರ ನಂತರ ಬೇರೆ ಪ್ರವಾದಿ ಬರುವುದಿಲ್ಲ.

ಬಗ್ಗೆ ತಿಳಿದವನಾಗಿದ್ದಾನೆ.

41. ಸತ್ಯವಿಶ್ವಾಸಿಗಳೇ! ನೀವು ಅಲ್ಲಾಹನನ್ನು ಅತಿಯಾಗಿ ಸ್ಮರಿಸಿರಿ.

يَٰٓأَيُّهَا ٱلَّذِينَ ءَامَنُواْ ٱذۡكُرُواْ ٱللَّهَ
ذِكۡرٗا كَثِيرٗا ٤١

42. ಮುಂಜಾನೆ ಮತ್ತು ಸಂಜೆ ಅವನ ಪರಿಶುದ್ಧಿಯನ್ನು ಕೊಂಡಾಡಿರಿ.

وَسَبِّحُوهُ بُكۡرَةٗ وَأَصِيلًا ٤٢

43. ನಿಮ್ಮ ಮೇಲೆ ಅನುಗ್ರಹಗಳನ್ನು ಸುರಿಸುವವನು ಅವನೇ. ಅವನ ದೇವದೂತರುಗಳು ನಿಮಗಾಗಿ ಪ್ರಾರ್ಥಿಸುತ್ತಾರೆ. ನಿಮ್ಮನ್ನು ಅಂಧಕಾರಗಳಿಂದ ಬೆಳಕಿಗೆ ತರುವುದಕ್ಕಾಗಿ. ಅವನು ಸತ್ಯವಿ-ಶ್ವಾಸಿಗಳ ಮೇಲೆ ಅತ್ಯಧಿಕ ದಯೆಯುಳ್ಳವನಾಗಿದ್ದಾನೆ.

هُوَ ٱلَّذِي يُصَلِّي عَلَيۡكُمۡ وَمَلَٰٓئِكَتُهُۥ
لِيُخۡرِجَكُم مِّنَ ٱلظُّلُمَٰتِ إِلَى ٱلنُّورِۚ وَكَانَ
بِٱلۡمُؤۡمِنِينَ رَحِيمٗا ٤٣

44. ಅವರು ಅವನನ್ನು ಭೇಟಿಯಾಗುವ ದಿನ ಅವರ ಅಭಿವಂದನೆಯು “ಸಲಾಂ” ಆಗಿರುವುದು. ಅವನು ಅವರಿಗೆ ಉದಾರ ಪ್ರತಿಫಲವನ್ನು ಸಿದ್ಧಗೊಳಿಸಿದ್ದಾನೆ.

تَحِيَّتُهُمۡ يَوۡمَ يَلۡقَوۡنَهُۥ سَلَٰمٞۚ وَأَعَدَّ لَهُمۡ أَجۡرٗا
كَرِيمٗا ٤٤

45. ಓ ಪ್ರವಾದಿಯವರೇ! ನಿಶ್ಚಯವಾಗಿಯೂ ನಾವು ನಿಮ್ಮನ್ನು ಸಾಕ್ಷಿಯಾಗಿ, ಸುವಾರ್ತೆ ತಿಳಿಸುವ ಮತ್ತು ಮುನ್ನೆಚ್ಚರಿಕೆ ನೀಡುವ (ಪ್ರವಾದಿಯಾಗಿ) ಕಳುಹಿಸಿದ್ದೇವೆ.

يَٰٓأَيُّهَا ٱلنَّبِيُّ إِنَّآ أَرۡسَلۡنَٰكَ شَٰهِدٗا وَمُبَشِّرٗا
وَنَذِيرٗا ٤٥

46. ಅಲ್ಲಾಹನ ಅಪ್ಪಣೆಯಂತೆ ಅವನ ಕಡೆಗೆ ಕರೆ ನೀಡುವವರಾಗಿ ಮತ್ತು ಬೆಳಕು ಹರಿಸುವ ದೀಪವಾಗಿ ಕಳುಹಿಸಿದ್ದೇವೆ.

وَدَاعِيًا إِلَى ٱللَّهِ بِإِذۡنِهِۦ وَسِرَاجٗا مُّنِيرٗا ٤٦

47. ಸತ್ಯವಿಶ್ವಾಸಿಗಳಿಗೆ ಅಲ್ಲಾಹನ ಬಳಿ ಮಹಾ ಔದಾರ್ಯವಿದೆಯೆಂಬ ಸುವಾರ್ತೆಯನ್ನು ತಿಳಿಸಿರಿ.

وَبَشِّرِ ٱلۡمُؤۡمِنِينَ بِأَنَّ لَهُم مِّنَ ٱللَّهِ فَضۡلٗا
كَبِيرٗا ٤٧

48. ಸತ್ಯನಿಷೇಧಿಗಳನ್ನು ಮತ್ತು ಕಪಟವಿಶ್ವಾಸಿಗಳನ್ನು ಅನುಸರಿಸಬೇಡಿ. ಅವರು ನೀಡುವ ತೊಂದರೆಗಳನ್ನು ನಿರ್ಲಕ್ಷಿಸಿರಿ ಮತ್ತು ಅಲ್ಲಾಹನಲ್ಲಿ ಭರವಸೆಯಿಡಿ. ಕಾರ್ಯನಿರ್ವಾಹಕನಾಗಿ ಅಲ್ಲಾಹು ಸಾಕು.

وَلَا تُطِعِ ٱلۡكَٰفِرِينَ وَٱلۡمُنَٰفِقِينَ وَدَعۡ أَذَىٰهُمۡ
وَتَوَكَّلۡ عَلَى ٱللَّهِۚ وَكَفَىٰ بِٱللَّهِ وَكِيلٗا ٤٨

49. ಓ ಸತ್ಯವಿಶ್ವಾಸಿಗಳೇ! ನೀವು ಸತ್ಯವಿಶ್ವಾಸಿ ಮಹಿಳೆಯರನ್ನು ವಿವಾಹವಾಗಿ, ನಂತರ ಅವರೊಡನೆ ಲೈಂಗಿಕ ಸಂಪರ್ಕ ಮಾಡುವುದಕ್ಕೆ ಮೊದಲೇ ಅವರಿಗೆ ವಿಚ್ಛೇದನ ನೀಡಿದರೆ, ನೀವು ಎಣಿಸುವ ಇದ್ದಃ (ದೀಕ್ಷಾಕಾಲ) ವನ್ನು ಆಚರಿಸಬೇಕಾದ ಹೊಣೆ ಅವರಿಗಿಲ್ಲ. ನೀವು ಅವರಿಗೆ ಏನಾದರೂ ನೀಡಿರಿ ಮತ್ತು ಅತ್ಯುತ್ತಮ ರೀತಿಯಲ್ಲಿ ಅವರನ್ನು ಕಳುಹಿಸಿಕೊಡಿ.

يَٰٓأَيُّهَا ٱلَّذِينَ ءَامَنُوٓاْ إِذَا نَكَحۡتُمُ ٱلۡمُؤۡمِنَٰتِ
ثُمَّ طَلَّقۡتُمُوهُنَّ مِن قَبۡلِ أَن تَمَسُّوهُنَّ فَمَا
لَكُمۡ عَلَيۡهِنَّ مِنۡ عِدَّةٖ تَعۡتَدُّونَهَاۖ فَمَتِّعُوهُنَّ
وَسَرِّحُوهُنَّ سَرَاحٗا جَمِيلٗا ٤٩

50. ಓ ಪ್ರವಾದಿಯವರೇ! ನೀವು ವಧುದಕ್ಷಿಣೆ (ಮಹರ್) ನೀಡಿ

يَٰٓأَيُّهَا ٱلنَّبِيُّ إِنَّآ أَحۡلَلۡنَا لَكَ أَزۡوَٰجَكَ ٱلَّٰتِيٓ

ವಿವಾಹವಾದ ನಿಮ್ಮ ಮಡದಿಯರನ್ನು ನಾವು ನಿಮಗೆ ಧರ್ಮಸಮ್ಮತಗೊಳಿಸಿದ್ದೇವೆ. ಅದೇ ರೀತಿ ಅಲ್ಲಾಹು ನಿಮಗೆ ಯುದ್ಧಾರ್ಜಿತವಾಗಿ ನೀಡಿದ ಗುಲಾಮ ಸ್ತ್ರೀಯರನ್ನು, ನಿಮ್ಮೊಂದಿಗೆ ವಲಸೆ (ಹಿಜ್ರ) ಮಾಡಿದ ನಿಮ್ಮ ತಂದೆಯ ಸಹೋದರರ ಪುತ್ರಿಯರನ್ನು, ತಂದೆಯ ಸಹೋದರಿಯ ಪುತ್ರಿಯರನ್ನು, ತಾಯಿಯ ಸಹೋದರರ ಪುತ್ರಿಯರನ್ನು ಮತ್ತು ತಾಯಿಯ ಸಹೋದರಿಯ ಪುತ್ರಿಯರನ್ನು ಧರ್ಮಸಮ್ಮತಗೊಳಿಸಿದ್ದೇವೆ. ಅದೇ ರೀತಿ ಸತ್ಯವಿಶ್ವಾಸಿಯಾದ ಹೆಣ್ಣು ತನ್ನ ದೇಹವನ್ನು ಪ್ರವಾದಿಗೆ ನೀಡಲು ಬಯಸುವುದಾದರೆ ಮತ್ತು ಪ್ರವಾದಿಯು ಆಕೆಯನ್ನು ವಿವಾಹವಾಗಲು ಬಯಸುವುದಾದರೆ ಅವಳು ಕೂಡ ಧರ್ಮಸಮ್ಮತವಾಗಿದ್ದಾಳೆ. ಇದು ವಿಶೇಷವಾಗಿ ನಿಮಗೆ ಮಾತ್ರವಾಗಿದೆ. ಸತ್ಯವಿಶ್ವಾಸಿಗಳಿಗೆ ಈ ಅವಕಾಶವಿಲ್ಲ. ನಾವು ಅವರ ಪತ್ನಿಯರ ಮತ್ತು ಗುಲಾಮ ಸ್ತ್ರೀಯರ ವಿಷಯದಲ್ಲಿ ಏನು ನಿಯಮ ಮಾಡಿದ್ದೇವೆಂದು ನಮಗೆ ಚೆನ್ನಾಗಿ ತಿಳಿದಿದೆ. ಇದು ನಿಮಗೆ ಯಾವುದೇ ತೊಂದರೆ ಉಂಟಾಗದಿರಲಿ ಎಂದು. ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

ءَاتَيْتَ أُجُورَهُنَّ وَمَا مَلَكَتْ يَمِينُكَ مِمَّآ أَفَآءَ ٱللَّهُ عَلَيْكَ وَبَنَاتِ عَمِّكَ وَبَنَاتِ عَمَّٰتِكَ وَبَنَاتِ خَالِكَ وَبَنَاتِ خَٰلَٰتِكَ ٱلَّٰتِى هَاجَرْنَ مَعَكَ وَٱمْرَأَةً مُّؤْمِنَةً إِن وَهَبَتْ نَفْسَهَا لِلنَّبِىِّ إِنْ أَرَادَ ٱلنَّبِىُّ أَن يَسْتَنكِحَهَا خَالِصَةً لَّكَ مِن دُونِ ٱلْمُؤْمِنِينَ ۗ قَدْ عَلِمْنَا مَا فَرَضْنَا عَلَيْهِمْ فِىٓ أَزْوَٰجِهِمْ وَمَا مَلَكَتْ أَيْمَٰنُهُمْ لِكَيْلَا يَكُونَ عَلَيْكَ حَرَجٌ ۗ وَكَانَ ٱللَّهُ غَفُورًا رَّحِيمًا ﴿٥٠﴾

---

51. (ಪ್ರವಾದಿಯವರೇ) ಅವರಲ್ಲಿ ನೀವು ಇಚ್ಛಿಸುವವರನ್ನು ದೂರವಿಡಬಹುದು ಮತ್ತು ನೀವು ಇಚ್ಛಿಸುವವರನ್ನು ಹತ್ತಿರವಿಡಬಹುದು. ನೀವು ದೂರವಿಟ್ಟ ಪತ್ನಿಯರಲ್ಲಿ ಯಾರನ್ನಾದರೂ ನೀವು ಹತ್ತಿರಕ್ಕೆ ಕರೆದರೆ ಅದರಲ್ಲಿ ನಿಮಗೆ ದೋಷವಿಲ್ಲ. ಅವರ ಕಣ್ಣು ತಂಪಾಗಲು, ಅವರು ಬೇಸರಪಡದಿರಲು ಮತ್ತು ನೀವು ಅವರಿಗೆ ನೀಡಿರುವುದರಲ್ಲಿ ಅವರೆಲ್ಲರೂ ಸಂತೃಪ್ತರಾಗಲು ಇದು ಅತ್ಯಂತ ಸೂಕ್ತವಾಗಿದೆ. ನಿಮ್ಮ ಹೃದಯಗಳಲ್ಲಿ ಏನಿದೆಯೆಂದು ಅಲ್ಲಾಹು ತಿಳಿಯುತ್ತಾನೆ. ಅಲ್ಲಾಹು ಸರ್ವಜ್ಞನು ಮತ್ತು ಸಹಿಷ್ಣುತೆಯುಳ್ಳನಾಗಿದ್ದಾನೆ.

تُرْجِى مَن تَشَآءُ مِنْهُنَّ وَتُـْٔوِىٓ إِلَيْكَ مَن تَشَآءُ ۖ وَمَنِ ٱبْتَغَيْتَ مِمَّنْ عَزَلْتَ فَلَا جُنَاحَ عَلَيْكَ ۚ ذَٰلِكَ أَدْنَىٰٓ أَن تَقَرَّ أَعْيُنُهُنَّ وَلَا يَحْزَنَّ وَيَرْضَيْنَ بِمَآ ءَاتَيْتَهُنَّ كُلُّهُنَّ ۚ وَٱللَّهُ يَعْلَمُ مَا فِى قُلُوبِكُمْ ۚ وَكَانَ ٱللَّهُ عَلِيمًا حَلِيمًا ﴿٥١﴾

---

52. ಇನ್ನು ಮುಂದೆ ಬೇರೆ ಸ್ತ್ರೀಯರನ್ನು ವಿವಾಹವಾಗುವುದು ನಿಮಗೆ ಧರ್ಮಸಮ್ಮತವಲ್ಲ. ಅದೇ ರೀತಿ ಇವರ ಬದಲಿಗೆ ಬೇರೆಯವರನ್ನು ವಿವಾಹವಾಗುವುದು ಕೂಡ ನಿಮಗೆ ಧರ್ಮಸಮ್ಮತವಲ್ಲ. ಅವರ ಅಂದವು ನಿಮ್ಮನ್ನು ಮಂತ್ರಮುಗ್ಧಗೊಳಿಸಿದರೂ ಸಹ. ಆದರೆ ನಿಮ್ಮ ಗುಲಾಮಸ್ತ್ರೀಯರ ಹೊರತು. ಅಲ್ಲಾಹು ಎಲ್ಲ ವಿಷಯಗಳನ್ನೂ ಗಮನಿಸುವವನಾಗಿದ್ದಾನೆ.

لَّا يَحِلُّ لَكَ ٱلنِّسَآءُ مِنۢ بَعْدُ وَلَآ أَن تَبَدَّلَ بِهِنَّ مِنْ أَزْوَٰجٍ وَلَوْ أَعْجَبَكَ حُسْنُهُنَّ إِلَّا مَا مَلَكَتْ يَمِينُكَ ۗ وَكَانَ ٱللَّهُ عَلَىٰ كُلِّ شَىْءٍ رَّقِيبًا ﴿٥٢﴾

---

53. ಓ ಸತ್ಯವಿಶ್ವಾಸಿಗಳೇ! ನಿಮಗೆ ಅನುಮತಿ ಸಿಗುವ ತನಕ ನೀವು ಆಹಾರ ಸೇವಿಸಲು ಪ್ರವಾದಿಯ ಮನೆಗಳನ್ನು

يَٰٓأَيُّهَا ٱلَّذِينَ ءَامَنُوا۟ لَا تَدْخُلُوا۟ بُيُوتَ ٱلنَّبِىِّ إِلَّآ أَن يُؤْذَنَ لَكُمْ إِلَىٰ طَعَامٍ غَيْرَ نَٰظِرِينَ

إِنَىٰهُ وَلَـٰكِنْ إِذَا دُعِيتُمْ فَٱدْخُلُواْ فَإِذَا طَعِمْتُمْ فَٱنتَشِرُواْ وَلَا مُسْتَـْٔنِسِينَ لِحَدِيثٍ ۚ إِنَّ ذَٰلِكُمْ كَانَ يُؤْذِى ٱلنَّبِىَّ فَيَسْتَحْىِۦ مِنكُمْ ۖ وَٱللَّهُ لَا يَسْتَحْىِۦ مِنَ ٱلْحَقِّ ۚ وَإِذَا سَأَلْتُمُوهُنَّ مَتَـٰعًا فَسْـَٔلُوهُنَّ مِن وَرَآءِ حِجَابٍ ۚ ذَٰلِكُمْ أَطْهَرُ لِقُلُوبِكُمْ وَقُلُوبِهِنَّ ۚ وَمَا كَانَ لَكُمْ أَن تُؤْذُواْ رَسُولَ ٱللَّهِ وَلَآ أَن تَنكِحُوٓاْ أَزْوَٰجَهُۥ مِنۢ بَعْدِهِۦٓ أَبَدًا ۚ إِنَّ ذَٰلِكُمْ كَانَ عِندَ ٱللَّهِ عَظِيمًا ﴿٥٣﴾

ಪ್ರವೇಶಿಸಬೇಡಿ—ಆಹಾರ ಸಿದ್ಧವಾಗುವುದನ್ನು ಕಾಯುತ್ತಾ ಅಲ್ಲಿ ಕೂರುವುದಕ್ಕಾಗಿ. ಬದಲಿಗೆ, ನಿಮ್ಮನ್ನು ಕರೆಯಲಾದರೆ ಒಳಗೆ ಪ್ರವೇಶಿಸಿರಿ ಮತ್ತು ಆಹಾರ ಸೇವಿಸಿದ ಬಳಿಕ ಹೊರಟು ಹೋಗಿರಿ. ಅಲ್ಲಿ ಹರಟೆ ಹೊಡೆಯುತ್ತಾ ಕೂರಬೇಡಿ. ಇದರಿಂದ ಪ್ರವಾದಿಯವರಿಗೆ ಖಂಡಿತ ತೊಂದರೆಯಾಗುತ್ತದೆ. ಅದನ್ನು ನಿಮ್ಮೊಡನೆ ಹೇಳಲು ಅವರು ಸಂಕೋಚಪಡುತ್ತಾರೆ. ಆದರೆ ಸತ್ಯವನ್ನು ಹೇಳಲು ಅಲ್ಲಾಹು ಸಂಕೋಚಪಡುವುದಿಲ್ಲ. ನೀವು ಅವರೊಡನೆ (ಪ್ರವಾದಿ ಪತ್ನಿಯರೊಡನೆ) ಏನಾದರೂ ವಸ್ತುವನ್ನು ಕೇಳುವುದಾದರೆ ಪರದೆಯ ಹಿಂದಿನಿಂದ ಕೇಳಿರಿ. ಅದು ನಿಮ್ಮ ಮತ್ತು ಅವರ ಹೃದಯಗಳಿಗೆ ಹೆಚ್ಚು ಪರಿಶುದ್ಧಿಯನ್ನು ನೀಡುತ್ತದೆ. ಅಲ್ಲಾಹನ ಪ್ರವಾದಿಗೆ ತೊಂದರೆ ಕೊಡುವುದು ನಿಮಗೆ ಧರ್ಮ-ಸಮ್ಮತವಲ್ಲ. ಅದೇ ರೀತಿ ಅವರ ನಿಧನದ ಬಳಿಕ ಅವರ ಪತ್ನಿಯರನ್ನು ಯಾವುದೇ ಸ್ಥಿತಿಯಲ್ಲೂ ವಿವಾಹವಾಗುವುದು ನಿಮಗೆ ಧರ್ಮಸಮ್ಮತವಲ್ಲ. ನಿಶ್ಚಯವಾಗಿಯೂ ಅವೆಲ್ಲವೂ ಅಲ್ಲಾಹನ ದೃಷ್ಟಿಯಲ್ಲಿ ಗಂಭೀರ ಅಪರಾಧಗಳಾಗಿವೆ.

---

إِن تُبْدُواْ شَيْـًٔا أَوْ تُخْفُوهُ فَإِنَّ ٱللَّهَ كَانَ بِكُلِّ شَىْءٍ عَلِيمًا ﴿٥٤﴾

54. ನೀವು ಯಾವುದೇ ವಿಷಯವನ್ನು ಬಹಿರಂಗಪಡಿಸಿದರೂ ಅಥವಾ ಅಡಗಿಸಿಟ್ಟರೂ—ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ವಿಷಯಗಳನ್ನು ತಿಳಿದವನಾಗಿದ್ದಾನೆ.

---

لَّا جُنَاحَ عَلَيْهِنَّ فِىٓ ءَابَآئِهِنَّ وَلَآ أَبْنَآئِهِنَّ وَلَآ إِخْوَٰنِهِنَّ وَلَآ أَبْنَآءِ إِخْوَٰنِهِنَّ وَلَآ أَبْنَآءِ أَخَوَٰتِهِنَّ وَلَا نِسَآئِهِنَّ وَلَا مَا مَلَكَتْ أَيْمَـٰنُهُنَّ ۗ وَٱتَّقِينَ ٱللَّهَ ۚ إِنَّ ٱللَّهَ كَانَ عَلَىٰ كُلِّ شَىْءٍ شَهِيدًا ﴿٥٥﴾

55. ಮಹಿಳೆಯರು ಅವರ ತಂದೆಯಂದಿರು, ಪುತ್ರರು, ಸಹೋದರರು, ಸಹೋದರ ಪುತ್ರರು, ಸಹೋದರಿ ಪುತ್ರರು, ಅವರದ್ದೇ ಮಹಿಳೆಯರು ಮತ್ತು ಅವರ ಅಧೀನದಲ್ಲಿರುವ ಗುಲಾಮರು ಮುಂತಾದವರ ಮುಂದೆ (ಹಿಜಾಬ್ ಧರಿಸದೆ) ಬರುವುದರಲ್ಲಿ ತೊಂದರೆಯಿಲ್ಲ. (ಮಹಿಳೆಯರೇ) ನೀವು ಅಲ್ಲಾಹನನ್ನು ಭಯಪಡಿರಿ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ವಿಷಯಗಳಿಗೂ ಸಾಕ್ಷಿಯಾಗಿದ್ದಾನೆ.

---

إِنَّ ٱللَّهَ وَمَلَـٰٓئِكَتَهُۥ يُصَلُّونَ عَلَى ٱلنَّبِىِّ ۚ يَـٰٓأَيُّهَا ٱلَّذِينَ ءَامَنُواْ صَلُّواْ عَلَيْهِ وَسَلِّمُواْ تَسْلِيمًا ﴿٥٦﴾

56. ನಿಶ್ಚಯವಾಗಿಯೂ ಅಲ್ಲಾಹು ಪ್ರವಾದಿಯ ಮೇಲೆ ಕೃಪೆ ತೋರುತ್ತಾನೆ ಮತ್ತು ದೇವದೂತರುಗಳು ಅದಕ್ಕಾಗಿ ಪ್ರಾರ್ಥಿಸುತ್ತಾರೆ. ಓ ಸತ್ಯವಿಶ್ವಾಸಿಗಳೇ! ನೀವು ಕೂಡ ಅವರ ಮೇಲೆ ಕೃಪೆ ಮತ್ತು ಶಾಂತಿ ವರ್ಷಿಸಲು ಪ್ರಾರ್ಥಿಸಿರಿ.

---

إِنَّ ٱلَّذِينَ يُؤْذُونَ ٱللَّهَ وَرَسُولَهُۥ لَعَنَهُمُ ٱللَّهُ فِى ٱلدُّنْيَا وَٱلْـَٔاخِرَةِ وَأَعَدَّ لَهُمْ عَذَابًا مُّهِينًا ﴿٥٧﴾

57. ನಿಶ್ಚಯವಾಗಿಯೂ ಅಲ್ಲಾಹು ಮತ್ತು ಅವನ ಸಂದೇಶವಾಹಕರಿಗೆ ತೊಂದರೆ ಕೊಡುವವರನ್ನು ಅಲ್ಲಾಹು ಇಹಲೋಕದಲ್ಲೂ, ಪರಲೋಕದಲ್ಲೂ ಶಪಿಸಿದ್ದಾನೆ. ಅವರಿಗೆ ಅತ್ಯಂತ ಅವಮಾನಕರ

ಶಿಕ್ಷೆಯನ್ನು ಸಿದ್ಧಗೊಳಿಸಿದ್ದಾನೆ.

---

58. ಸತ್ಯವಿಶ್ವಾಸಿ ಪುರುಷರು ಮತ್ತು ಮಹಿಳೆಯರು ಯಾವುದೇ ತಪ್ಪು ಮಾಡದಿದ್ದರೂ ಸಹ ಅವರಿಗೆ ತೊಂದರೆ ಕೊಡುವವರು ಯಾರೋ ಅವರು ಮಹಾ ಸುಳ್ಳಾರೋಪವನ್ನು ಮತ್ತು ಸ್ಪಷ್ಟ ಪಾಪವನ್ನು ಹೊತ್ತುಕೊಳ್ಳುತ್ತಾರೆ.

وَٱلَّذِينَ يُؤْذُونَ ٱلْمُؤْمِنِينَ وَٱلْمُؤْمِنَـٰتِ
بِغَيْرِ مَا ٱكْتَسَبُوا۟ فَقَدِ ٱحْتَمَلُوا۟ بُهْتَـٰنًا
وَإِثْمًا مُّبِينًا ﴿٥٨﴾

---

59. ಓ ಪ್ರವಾದಿಯವರೇ! ನಿಮ್ಮ ಮಡದಿಯರಿಗೆ, ಪುತ್ರಿಯರಿಗೆ ಮತ್ತು ಸತ್ಯವಿಶ್ವಾಸಿ ಮಹಿಳೆಯರಿಗೆ—ಅವರು ತಮ್ಮ ಮೈಮೇಲೆ ಚಾದರಗಳನ್ನು ಹೊದ್ದುಕೊಳ್ಳಲು ಹೇಳಿರಿ. ಇದರಿಂದ ಅವರನ್ನು ಬಹಳ ಬೇಗ ಗುರುತು ಹಚ್ಚಲು ಸಾಧ್ಯವಾಗುತ್ತದೆ ಮತ್ತು ಅವರಿಗೆ ಕಿರುಕುಳಗಳು ಉಂಟಾಗುವುದಿಲ್ಲ. ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

يَـٰٓأَيُّهَا ٱلنَّبِىُّ قُل لِّأَزْوَٰجِكَ وَبَنَاتِكَ وَنِسَآءِ
ٱلْمُؤْمِنِينَ يُدْنِينَ عَلَيْهِنَّ مِن جَلَـٰبِيبِهِنَّ ۚ ذَٰلِكَ
أَدْنَىٰٓ أَن يُعْرَفْنَ فَلَا يُؤْذَيْنَ ۗ وَكَانَ ٱللَّهُ غَفُورًا
رَّحِيمًا ﴿٥٩﴾

---

60. ಕಪಟವಿಶ್ವಾಸಿಗಳು, ಹೃದಯಗಳಲ್ಲಿ ರೋಗವಿರುವವರು ಮತ್ತು ಮದೀನದಲ್ಲಿ ಸುಳ್ಳು ವದಂತಿ ಹಬ್ಬಿಸುವವರು ಅದನ್ನು ನಿಲ್ಲಿಸದಿದ್ದರೆ ನಾವು ನಿಮಗೆ ಖಂಡಿತ ಅವರ ಮೇಲೆ ಹತೋಟಿಯನ್ನು ನೀಡುತ್ತೇವೆ. ನಂತರ ಅವರು ಸ್ವಲ್ಪ ದಿನಗಳವರೆಗೆ ಮಾತ್ರ ನಿಮ್ಮೊಡನೆ ಅಲ್ಲಿ (ಮದೀನದಲ್ಲಿ) ಇರಲು ಸಾಧ್ಯ.

لَّئِن لَّمْ يَنتَهِ ٱلْمُنَـٰفِقُونَ وَٱلَّذِينَ فِى قُلُوبِهِم
مَّرَضٌ وَٱلْمُرْجِفُونَ فِى ٱلْمَدِينَةِ لَنُغْرِيَنَّكَ بِهِمْ
ثُمَّ لَا يُجَاوِرُونَكَ فِيهَآ إِلَّا قَلِيلًا ﴿٦٠﴾

---

61. ಅವರು ಶಾಪಗ್ರಸ್ತರು. ಅವರು ಎಲ್ಲೇ ಕಂಡುಬಂದರೂ ಅವರನ್ನು ಸೆರೆ ಹಿಡಿಯಲಾಗಲಿ ಮತ್ತು ಕಗ್ಗೊಲೆ ಮಾಡಲಾಗಲಿ.

مَّلْعُونِينَ ۖ أَيْنَمَا ثُقِفُوٓا۟ أُخِذُوا۟ وَقُتِّلُوا۟
تَقْتِيلًا ﴿٦١﴾

---

62. ಹಿಂದಿನ ಕಾಲದವರ ವಿಷಯದಲ್ಲೂ ಅಲ್ಲಾಹು ಇದೇ ಕ್ರಮ ಕೈಗೊಂಡಿದ್ದನು. ಅಲ್ಲಾಹನ ಕ್ರಮಕ್ಕೆ ನೀವು ಯಾವುದೇ ಬದಲಾವಣೆಯನ್ನು ಕಾಣಲಾರಿರಿ.

سُنَّةَ ٱللَّهِ فِى ٱلَّذِينَ خَلَوْا۟ مِن قَبْلُ ۖ وَلَن تَجِدَ
لِسُنَّةِ ٱللَّهِ تَبْدِيلًا ﴿٦٢﴾

---

63. ಜನರು ನಿಮ್ಮೊಂದಿಗೆ ಅಂತ್ಯಸಮಯದ ಬಗ್ಗೆ ಕೇಳುತ್ತಾರೆ. ಹೇಳಿರಿ: “ಅದರ ಜ್ಞಾನವಿರುವುದು ಅಲ್ಲಾಹನ ಬಳಿ ಮಾತ್ರ.” ನಿಮಗೇನು ಗೊತ್ತು? ಅಂತ್ಯಸಮಯವು ಬಹಳ ಹತ್ತಿರದಲ್ಲೇ ಇರಬಹುದು!

يَسْـَٔلُكَ ٱلنَّاسُ عَنِ ٱلسَّاعَةِ ۖ قُلْ إِنَّمَا عِلْمُهَا
عِندَ ٱللَّهِ ۚ وَمَا يُدْرِيكَ لَعَلَّ ٱلسَّاعَةَ تَكُونُ
قَرِيبًا ﴿٦٣﴾

---

64. ನಿಶ್ಚಯವಾಗಿಯೂ ಅಲ್ಲಾಹು ಸತ್ಯನಿಷೇಧಿಗಳನ್ನು ಶಪಿಸಿದ್ದಾನೆ ಮತ್ತು ಅವರಿಗೆ ಜ್ವಲಿಸುವ ನರಕವನ್ನು ಸಿದ್ಧಗೊಳಿಸಿದ್ದಾನೆ.

إِنَّ ٱللَّهَ لَعَنَ ٱلْكَـٰفِرِينَ وَأَعَدَّ لَهُمْ سَعِيرًا ﴿٦٤﴾

---

65. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅವರಿಗೆ ಯಾವುದೇ ರಕ್ಷಕರು ಅಥವಾ ಸಹಾಯಕರು ಇರುವುದಿಲ್ಲ.

خَـٰلِدِينَ فِيهَآ أَبَدًا ۖ لَّا يَجِدُونَ وَلِيًّا
وَلَا نَصِيرًا ﴿٦٥﴾

---

66. ಅವರ ಮುಖಗಳು ನರಕದಲ್ಲಿ ಬುಡಮೇಲಾಗುವ ದಿನ! ಅವರು

يَوْمَ تُقَلَّبُ وُجُوهُهُمْ فِى ٱلنَّارِ يَقُولُونَ يَـٰلَيْتَنَآ

ಹೇಳುವರು: “ನಾವು ಅಲ್ಲಾಹು ಮತ್ತು ಅವನ ಸಂದೇಶವಾಹಕರ ಆಜ್ಞಾಪಾಲನೆ ಮಾಡುತ್ತಿದ್ದರೆ ಎಷ್ಟು ಚೆನ್ನಾಗಿತ್ತು!”

أَطَعۡنَا ٱللَّهَ وَأَطَعۡنَا ٱلرَّسُولَا ٦٦

---

67. ಅವರು ಹೇಳುವರು: “ನಮ್ಮ ಪರಿಪಾಲಕನೇ! ನಾವು ನಮ್ಮ ಮುಖಂಡರು ಮತ್ತು ಹಿರಿಯರು ಹೇಳಿದಂತೆ ಕೇಳಿದೆವು. ಅವರು ನಮ್ಮನ್ನು ನೇರಮಾರ್ಗದಿಂದ ತಪ್ಪಿಸಿದರು.

وَقَالُواْ رَبَّنَآ إِنَّآ أَطَعۡنَا سَادَتَنَا وَكُبَرَآءَنَا فَأَضَلُّونَا ٱلسَّبِيلَا ٦٧

---

68. ನಮ್ಮ ಪರಿಪಾಲಕನೇ! ಅವರಿಗೆ ಇಮ್ಮಡಿ ಶಿಕ್ಷೆಯನ್ನು ನೀಡು ಮತ್ತು ಅವರನ್ನು ಉಗ್ರವಾಗಿ ಶಪಿಸು.”

رَبَّنَآ ءَاتِهِمۡ ضِعۡفَيۡنِ مِنَ ٱلۡعَذَابِ وَٱلۡعَنۡهُمۡ لَعۡنٗا كَبِيرٗا ٦٨

---

69. ಓ ಸತ್ಯವಿಶ್ವಾಸಿಗಳೇ! ಮೂಸಾರಿಗೆ ತೊಂದರೆ ಕೊಟ್ಟ ಜನರಂತೆ ನೀವಾಗಬೇಡಿ. ಅವರು ಏನು ಮಾತು ಹೇಳಿದರೋ ಅದರಿಂದ ಅಲ್ಲಾಹು ಅವರನ್ನು (ಮೂಸಾರನ್ನು) ಮುಕ್ತಗೊಳಿಸಿದನು. ಅವರು (ಮೂಸಾ) ಅಲ್ಲಾಹನ ಬಳಿ ಉತ್ಕೃಷ್ಟರಾಗಿದ್ದಾರೆ.

يَٰٓأَيُّهَا ٱلَّذِينَ ءَامَنُواْ لَا تَكُونُواْ كَٱلَّذِينَ ءَاذَوۡاْ مُوسَىٰ فَبَرَّأَهُ ٱللَّهُ مِمَّا قَالُواْۚ وَكَانَ عِندَ ٱللَّهِ وَجِيهٗا ٦٩

---

70. ಓ ಸತ್ಯವಿಶ್ವಾಸಿಗಳೇ! ನೀವು ಅಲ್ಲಾಹನನ್ನು ಭಯಪಡಿರಿ ಮತ್ತು ನೇರವಾದ (ಸತ್ಯವಾದ) ಮಾತುಗಳನ್ನಾಡಿರಿ.

يَٰٓأَيُّهَا ٱلَّذِينَ ءَامَنُواْ ٱتَّقُواْ ٱللَّهَ وَقُولُواْ قَوۡلٗا سَدِيدٗا ٧٠

---

71. ಹಾಗಾದರೆ ಅಲ್ಲಾಹು ನಿಮಗೆ ನಿಮ್ಮ ಕರ್ಮಗಳನ್ನು ಸರಿಪಡಿಸುವನು ಮತ್ತು ನಿಮ್ಮ ಪಾಪಗಳನ್ನು ಕ್ಷಮಿಸುವನು. ಯಾರು ಅಲ್ಲಾಹು ಮತ್ತು ಅವನ ಸಂದೇಶವಾಹಕರ ಆಜ್ಞೆಗಳನ್ನು ಪಾಲಿಸುತ್ತಾನೋ ಅವನು ಮಹಾ ವಿಜಯವನ್ನು ಗಳಿಸಿದ್ದಾನೆ.

يُصۡلِحۡ لَكُمۡ أَعۡمَٰلَكُمۡ وَيَغۡفِرۡ لَكُمۡ ذُنُوبَكُمۡۗ وَمَن يُطِعِ ٱللَّهَ وَرَسُولَهُۥ فَقَدۡ فَازَ فَوۡزًا عَظِيمًا ٧١

---

72. ನಿಶ್ಚಯವಾಗಿಯೂ ನಾವು ಆ ವಿಶ್ವಸ್ತತೆಯನ್ನು ಭೂಮ್ಯಾಕಾಶಗಳು ಮತ್ತು ಪರ್ವತಗಳ ಮುಂದೆ ಇಟ್ಟಾಗ, ಅದನ್ನು ವಹಿಸಿಕೊಳ್ಳಲು ಅವೆಲ್ಲವೂ ನಿರಾಕರಿಸಿದವು ಮತ್ತು ಅದನ್ನು ಭಯಪಟ್ಟವು. ಆದರೆ ಮನುಷ್ಯನು ಅದನ್ನು ವಹಿಸಿಕೊಂಡನು. ಮನುಷ್ಯನು ಮಹಾ ಅಕ್ರಮಿ ಮತ್ತು ಅವಿವೇಕಿಯಾಗಿದ್ದಾನೆ.

إِنَّا عَرَضۡنَا ٱلۡأَمَانَةَ عَلَى ٱلسَّمَٰوَٰتِ وَٱلۡأَرۡضِ وَٱلۡجِبَالِ فَأَبَيۡنَ أَن يَحۡمِلۡنَهَا وَأَشۡفَقۡنَ مِنۡهَا وَحَمَلَهَا ٱلۡإِنسَٰنُۖ إِنَّهُۥ كَانَ ظَلُومٗا جَهُولٗا ٧٢

---

73. ಅಲ್ಲಾಹು ಕಪಟವಿಶ್ವಾಸಿ ಪುರುಷರನ್ನು ಮತ್ತು ಮಹಿಳೆಯರನ್ನು ಹಾಗೂ ಬಹುದೇವವಿಶ್ವಾಸಿ ಪುರುಷರನ್ನು ಮತ್ತು ಮಹಿಳೆಯನ್ನು ಶಿಕ್ಷಿಸುವುದಕ್ಕಾಗಿ ಹಾಗೂ ಸತ್ಯವಿಶ್ವಾಸಿ ಪುರುಷರು ಮತ್ತು ಮಹಿಳೆಯರ ಪಶ್ಚಾತ್ತಾಪವನ್ನು ಸ್ವೀಕರಿಸುವುದಕ್ಕಾಗಿ. ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

لِّيُعَذِّبَ ٱللَّهُ ٱلۡمُنَٰفِقِينَ وَٱلۡمُنَٰفِقَٰتِ وَٱلۡمُشۡرِكِينَ وَٱلۡمُشۡرِكَٰتِ وَيَتُوبَ ٱللَّهُ عَلَى ٱلۡمُؤۡمِنِينَ وَٱلۡمُؤۡمِنَٰتِۗ وَكَانَ ٱللَّهُ غَفُورٗا رَّحِيمًا ٧٣

# 34. ಸಬಅ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسْمِ ٱللَّهِ ٱلرَّحْمَـٰنِ ٱلرَّحِيمِ

1. ಭೂಮ್ಯಾಕಾಶಗಳಲ್ಲಿರುವುದೆಲ್ಲವೂ ಯಾರಿಗೆ ಸೇರಿದೆಯೋ ಆ ಅಲ್ಲಾಹನಿಗೆ ಸರ್ವಸ್ತುತಿ. ಪರಲೋಕದಲ್ಲೂ ಅವನಿಗೇ ಸರ್ವಸ್ತುತಿ. ಅವನು ವಿವೇಕಪೂರ್ಣನು ಮತ್ತು ಸೂಕ್ಷ್ಮಜ್ಞಾನಿಯಾಗಿದ್ದಾನೆ.

ٱلْحَمْدُ لِلَّهِ ٱلَّذِى لَهُۥ مَا فِى ٱلسَّمَـٰوَٰتِ وَمَا فِى ٱلْأَرْضِ وَلَهُ ٱلْحَمْدُ فِى ٱلْـَٔاخِرَةِ ۚ وَهُوَ ٱلْحَكِيمُ ٱلْخَبِيرُ ١

2. ಭೂಮಿಗೆ ಏನೆಲ್ಲಾ ಪ್ರವೇಶಿಸುತ್ತವೆ, ಭೂಮಿಯಿಂದ ಏನೆಲ್ಲಾ ಹೊರಬರುತ್ತವೆ, ಆಕಾಶದಿಂದ ಏನೆಲ್ಲಾ ಇಳಿಯುತ್ತವೆ ಮತ್ತು ಏನೆಲ್ಲಾ ಆಕಾಶಕ್ಕೇರುತ್ತವೆಯೆಂದು ಅವನು ತಿಳಿಯುತ್ತಾನೆ. ಅವನು ದಯೆ ತೋರುವವನು ಮತ್ತು ಕ್ಷಮಿಸುವವನಾಗಿದ್ದಾನೆ.

يَعْلَمُ مَا يَلِجُ فِى ٱلْأَرْضِ وَمَا يَخْرُجُ مِنْهَا وَمَا يَنزِلُ مِنَ ٱلسَّمَآءِ وَمَا يَعْرُجُ فِيهَا ۚ وَهُوَ ٱلرَّحِيمُ ٱلْغَفُورُ ٢

3. ಸತ್ಯನಿಷೇಧಿಗಳು ಹೇಳಿದರು: "ಅಂತ್ಯಸಮಯವು ನಮ್ಮ ಬಳಿಗೆ ಬರುವುದಿಲ್ಲ." ಹೇಳಿರಿ: "ಹೌದು, ನನ್ನ ಪರಿಪಾಲಕನ (ಅಲ್ಲಾಹನ) ಮೇಲಾಣೆ! ಅವನು ಅದೃಶ್ಯಜ್ಞಾನಿಯಾಗಿ-ದ್ದಾನೆ. ಅದು ನಿಮ್ಮ ಬಳಿಗೆ ಖಂಡಿತ ಬರುತ್ತದೆ. ಭೂಮ್ಯಾಕಾ-ಶಗಳಲ್ಲಿ ಒಂದು ಅಣುವಿನ ಗಾತ್ರದ ಅಥವಾ ಅದಕ್ಕಿಂತ ಚಿಕ್ಕ ಅಥವಾ ದೊಡ್ಡದಾದ ಯಾವುದೇ ವಸ್ತುವೂ ಅಲ್ಲಾಹನಿಂದ ಮರೆಯಾಗಿಲ್ಲ. ಎಲ್ಲವನ್ನೂ ಒಂದು ಸ್ಪಷ್ಟ ಗ್ರಂಥದಲ್ಲಿ ದಾಖಲಿಸಲಾಗಿದೆ.

وَقَالَ ٱلَّذِينَ كَفَرُوا۟ لَا تَأْتِينَا ٱلسَّاعَةُ ۖ قُلْ بَلَىٰ وَرَبِّى لَتَأْتِيَنَّكُمْ عَـٰلِمِ ٱلْغَيْبِ ۖ لَا يَعْزُبُ عَنْهُ مِثْقَالُ ذَرَّةٍ فِى ٱلسَّمَـٰوَٰتِ وَلَا فِى ٱلْأَرْضِ وَلَآ أَصْغَرُ مِن ذَٰلِكَ وَلَآ أَكْبَرُ إِلَّا فِى كِتَـٰبٍ مُّبِينٍ ٣

4. ಅಲ್ಲಾಹು ಸತ್ಯವಿಶ್ವಾಸಿಗಳಿಗೆ ಮತ್ತು ಸತ್ಕರ್ಮವೆಸಗಿದವರಿಗೆ ಪ್ರತಿಫಲವನ್ನು ನೀಡುವುದಕ್ಕಾಗಿ. ಅವರಿಗೆ ಕ್ಷಮೆ ಮತ್ತು ಗಣ್ಯ ಉಪಜೀವನವಿದೆ.

لِّيَجْزِىَ ٱلَّذِينَ ءَامَنُوا۟ وَعَمِلُوا۟ ٱلصَّـٰلِحَـٰتِ ۚ أُو۟لَـٰٓئِكَ لَهُم مَّغْفِرَةٌ وَرِزْقٌ كَرِيمٌ ٤

5. ನಮ್ಮ ವಚನಗಳನ್ನು ವಿರೂಪವಾಗಿ ತೋರಿಸಲು ಪ್ರಯ-ತ್ನಿಸುವವರು ಯಾರೋ ಅವರಿಗೆ ಅತ್ಯಂತ ಕೆಟ್ಟ ರೀತಿಯ ಯಾತನಾಮಯ ಶಿಕ್ಷೆಯಿದೆ.

وَٱلَّذِينَ سَعَوْ فِىٓ ءَايَـٰتِنَا مُعَـٰجِزِينَ أُو۟لَـٰٓئِكَ لَهُمْ عَذَابٌ مِّن رِّجْزٍ أَلِيمٌ ٥

6. ನಿಮಗೆ ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯಿಂದ ಏನು ಅವತೀರ್ಣವಾಗಿದೆಯೋ ಅದು ಸತ್ಯವಾಗಿದೆ ಮತ್ತು ಅದು ಪ್ರಬಲನು ಹಾಗೂ ಸ್ತುತ್ಯರ್ಹನಾದ ಅಲ್ಲಾಹನ ಮಾರ್ಗಕ್ಕೆ ಒಯ್ಯುತ್ತದೆ ಎಂದು ಜ್ಞಾನ ನೀಡಲಾದವರು ತಿಳಿಯುತ್ತಾರೆ.

وَيَرَى ٱلَّذِينَ أُوتُوا۟ ٱلْعِلْمَ ٱلَّذِىٓ أُنزِلَ إِلَيْكَ مِن رَّبِّكَ هُوَ ٱلْحَقَّ وَيَهْدِىٓ إِلَىٰ صِرَٰطِ ٱلْعَزِيزِ ٱلْحَمِيدِ ٦

7. ಸತ್ಯನಿಷೇಧಿಗಳು ಹೇಳಿದರು: "ನೀವು (ನಿಧನರಾಗಿ) ಸಂಪೂರ್ಣ ಛಿದ್ರವಾದ ನಂತರ ನಿಮ್ಮನ್ನು ಪುನಃ ಹೊಸದಾಗಿ

وَقَالَ ٱلَّذِينَ كَفَرُوا۟ هَلْ نَدُلُّكُمْ عَلَىٰ رَجُلٍ يُنَبِّئُكُمْ إِذَا مُزِّقْتُمْ كُلَّ مُمَزَّقٍ إِنَّكُمْ لَفِى

خَلۡقٖ جَدِيدٍ ٧

ಸೃಷ್ಟಿಸಲಾಗುವುದು ಎಂದು ನಿಮ್ಮೊಡನೆ ವಾದಿಸುವ ಒಬ್ಬ ವ್ಯಕ್ತಿಯನ್ನು ನಾವು ನಿಮಗೆ ತೋರಿಸಿಕೊಡಬೇಕೇ?

---

أَفۡتَرَىٰ عَلَى ٱللَّهِ كَذِبًا أَم بِهِۦ جِنَّةُۢۗ بَلِ ٱلَّذِينَ
لَا يُؤۡمِنُونَ بِٱلۡأٓخِرَةِ فِي ٱلۡعَذَابِ وَٱلضَّلَٰلِ
ٱلۡبَعِيدِ ٨

8. ಅವನು ಅಲ್ಲಾಹನ ಮೇಲೆ ಸುಳ್ಳು ಆರೋಪಿಸಿದ್ದಾನೆಯೇ? ಅಥವಾ ಅವನಿಗೆ ಬುದ್ಧಿ ಸರಿಯಿಲ್ಲವೇ?" ಅಲ್ಲ, ವಾಸ್ತವವಾಗಿ ಪರಲೋಕದಲ್ಲಿ ವಿಶ್ವಾಸವಿಡದವರು ಶಿಕ್ಷೆಯಲ್ಲಿ ಮತ್ತು ವಿದೂರ ದುರ್ಮಾರ್ಗದಲ್ಲಿದ್ದಾರೆ.

---

أَفَلَمۡ يَرَوۡاْ إِلَىٰ مَا بَيۡنَ أَيۡدِيهِمۡ وَمَا خَلۡفَهُم مِّنَ
ٱلسَّمَآءِ وَٱلۡأَرۡضِۚ إِن نَّشَأۡ نَخۡسِفۡ بِهِمُ ٱلۡأَرۡضَ
أَوۡ نُسۡقِطۡ عَلَيۡهِمۡ كِسَفٗا مِّنَ ٱلسَّمَآءِۚ إِنَّ فِي
ذَٰلِكَ لَأٓيَةٗ لِّكُلِّ عَبۡدٖ مُّنِيبٖ ٩

9. ಅವರು ತಮ್ಮ ಮುಂಭಾಗದಲ್ಲಿ ಮತ್ತು ಹಿಂಭಾಗದಲ್ಲಿರುವ ಆಕಾಶ ಮತ್ತು ಭೂಮಿಯನ್ನು ನೋಡುವುದಿಲ್ಲವೇ? ನಾವು ಬಯಸಿದರೆ ಅವರನ್ನು ಭೂಮಿಯಲ್ಲಿ ಹುದುಗಿಸುವೆವು ಅಥವಾ ಅವರ ಮೇಲೆ ಆಕಾಶದಿಂದ ತುಣುಕುಗಳನ್ನು ಬೀಳಿಸುವೆವು. ನಿಶ್ಚಯವಾಗಿಯೂ ಅಲ್ಲಾಹನ ಕಡೆಗೆ ತಿರುಗುವ ಎಲ್ಲಾ ದಾಸರಿಗೂ ಅದರಲ್ಲಿ ದೃಷ್ಟಾಂತವಿದೆ.

---

وَلَقَدۡ ءَاتَيۡنَا دَاوُۥدَ مِنَّا فَضۡلٗاۖ يَٰجِبَالُ أَوِّبِي
مَعَهُۥ وَٱلطَّيۡرَۖ وَأَلَنَّا لَهُ ٱلۡحَدِيدَ ١٠

10. ನಿಶ್ಚಯವಾಗಿಯೂ ನಾವು ದಾವೂದರಿಗೆ ನಮ್ಮ ಕಡೆಯ ಔದಾರ್ಯವನ್ನು ದಯಪಾಲಿಸಿದೆವು. (ನಾವು ಹೇಳಿದೆವು): "ಪರ್ವತಗಳೇ! ನೀವು ಅವರೊಂದಿಗೆ ಸ್ತುತಿಗಳನ್ನು ಹೇಳಿರಿ. ಹಕ್ಕಿಗಳೇ! ನೀವೂ ಸಹ." ನಾವು ಅವರಿಗೆ (ದಾವೂದರಿಗೆ) ಕಬ್ಬಿಣವನ್ನು ಮೃದುಗೊಳಿಸಿ ಕೊಟ್ಟೆವು.

---

أَنِ ٱعۡمَلۡ سَٰبِغَٰتٖ وَقَدِّرۡ فِي ٱلسَّرۡدِۖ وَٱعۡمَلُواْ
صَٰلِحًاۖ إِنِّي بِمَا تَعۡمَلُونَ بَصِيرٞ ١١

11. (ನಾವು ಆದೇಶಿಸಿದೆವು): "ಪೂರ್ಣ ಗಾತ್ರದ ಯುದ್ಧಾಂಗಿಗಳನ್ನು ನಿರ್ಮಿಸಿರಿ. ಅದರ ಕೊಂಡಿಗಳನ್ನು ಸರಿಯಾಗಿ ನಿರ್ಣಯಿಸಿರಿ. ನೀವೆಲ್ಲರೂ ಸತ್ಕರ್ಮಗಳನ್ನು ಮಾಡಿರಿ. ನಿಶ್ಚಯವಾಗಿಯೂ ನೀವು ಮಾಡುತ್ತಿರುವ ಕರ್ಮಗಳನ್ನು ನಾನು ನೋಡುತ್ತಿದ್ದೇನೆ."

---

وَلِسُلَيۡمَٰنَ ٱلرِّيحَ غُدُوُّهَا شَهۡرٞ وَرَوَاحُهَا شَهۡرٞۖ
وَأَسَلۡنَا لَهُۥ عَيۡنَ ٱلۡقِطۡرِۖ وَمِنَ ٱلۡجِنِّ مَن يَعۡمَلُ
بَيۡنَ يَدَيۡهِ بِإِذۡنِ رَبِّهِۦۖ وَمَن يَزِغۡ مِنۡهُمۡ عَنۡ
أَمۡرِنَا نُذِقۡهُ مِنۡ عَذَابِ ٱلسَّعِيرِ ١٢

12. ನಾವು ಸುಲೈಮಾನರಿಗೆ ಗಾಳಿಯನ್ನು (ನಿಯಂತ್ರಿಸಿಕೊಟ್ಟೆವು). ಅದು ಮುಂಜಾನೆ ಒಂದು ತಿಂಗಳಿನಷ್ಟು ದೂರ ಪ್ರಯಾಣ ಮಾಡುತ್ತದೆ ಮತ್ತು ಸಂಜೆ ಕೂಡ ಒಂದು ತಿಂಗಳಿನಷ್ಟು ದೂರ ಪ್ರಯಾಣ ಮಾಡುತ್ತದೆ. ಅವರಿಗೆ ನಾವು ತಾಮ್ರದ ಒಂದು ಚಿಲುಮೆಯನ್ನು ಹರಿಸಿಕೊಟ್ಟೆವು. ಕೆಲವು ಜಿನ್ನ್‌ಗಳು ಅವರ ಪರಿಪಾಲಕನ (ಅಲ್ಲಾಹನ) ಆಜ್ಞೆಯಂತೆ ಅವರ ಮುಂಭಾಗದಲ್ಲಿ ಕೆಲಸ ಮಾಡುತ್ತಿದ್ದರು. ಅವರಲ್ಲಿ ಯಾರಾದರೂ ನಮ್ಮ ಆಜ್ಞೆಗೆ ತಲೆಬಾಗದಿದ್ದರೆ ನಾವು ಅವನಿಗೆ ಜ್ವಲಿಸುವ ಬೆಂಕಿಯ ಶಿಕ್ಷೆಯ ರುಚಿಯನ್ನು ತೋರಿಸುವೆವು.

---

يَعۡمَلُونَ لَهُۥ مَا يَشَآءُ مِن مَّحَٰرِيبَ

13. ಕೋಟೆಗಳು, ಶಿಲ್ಪಗಳು, ಜಲಾಶಯದಂತಹ ಬೋಗುಣಿಗಳು,

وَتَمَٰثِيلَ وَجِفَانٖ كَٱلۡجَوَابِ وَقُدُورٖ رَّاسِيَٰتٍۚ ٱعۡمَلُوٓاْ ءَالَ دَاوُۥدَ شُكۡرٗاۚ وَقَلِيلٞ مِّنۡ عِبَادِيَ ٱلشَّكُورُ ١٣

ಒಲೆಯಲ್ಲಿ ಗಟ್ಟಿಯಾಗಿ ಸ್ಥಾಪಿಸಲಾದ ಕಡಾಯಿಗಳು ಮುಂತಾದ ಸುಲೈಮಾನರು ಬಯಸುವ ಎಲ್ಲವನ್ನೂ ಅವರು (ಜಿನ್ನ್‌ಗಳು) ನಿರ್ಮಿಸಿಕೊಡುತ್ತಿದ್ದರು. (ನಾವು ಆದೇಶಿಸಿದೆವು): "ಓ ದಾವೂದ್ ಕುಟುಂಬದವರೇ! ಇದಕ್ಕೆ ಕೃತಜ್ಞತೆಯಾಗಿ ಸತ್ಕರ್ಮಗಳನ್ನು ಮಾಡಿರಿ." ನನ್ನ ದಾಸರಲ್ಲಿ ಕೃತಜ್ಞರಾಗಿರುವವರು ಬಹಳ ಕಡಿಮೆ.

---

فَلَمَّا قَضَيۡنَا عَلَيۡهِ ٱلۡمَوۡتَ مَا دَلَّهُمۡ عَلَىٰ مَوۡتِهِۦٓ إِلَّا دَآبَّةُ ٱلۡأَرۡضِ تَأۡكُلُ مِنسَأَتَهُۥۖ فَلَمَّا خَرَّ تَبَيَّنَتِ ٱلۡجِنُّ أَن لَّوۡ كَانُواْ يَعۡلَمُونَ ٱلۡغَيۡبَ مَا لَبِثُواْ فِي ٱلۡعَذَابِ ٱلۡمُهِينِ ١٤

14. ನಾವು ಅವರಿಗೆ ಮರಣವನ್ನು ವಿಧಿಸಿದಾಗ, ಅವರ ಮರಣದ ಬಗ್ಗೆ ಜಿನ್ನ್‌ಗಳಿಗೆ ತಿಳಿಸಿದ್ದು ಅವರ ಊರುಗೋಲನ್ನು ತಿನ್ನುತ್ತಿದ್ದ ಗೆದ್ದಲುಗಳಾಗಿದ್ದವು. ಸುಲೈಮಾನರ ದೇಹವು ಕೆಳಗೆ ಬಿದ್ದಾಗ, ನಮಗೆ ಅದೃಶ್ಯ ವಿಷಯಗಳು ತಿಳಿದಿರುತ್ತಿದ್ದರೆ ನಾವು ಈ ಅವಮಾನಕರ ಶಿಕ್ಷೆಯಲ್ಲಿ ಕೊಳೆಯಬೇಕಾಗಿ ಬರುತ್ತಿರಲಿಲ್ಲ ಎಂದು ಜಿನ್ನ್‌ಗಳಿಗೆ ಮನವರಿಕೆಯಾಯಿತು.[1]

---

لَقَدۡ كَانَ لِسَبَإٖ فِي مَسۡكَنِهِمۡ ءَايَةٞۖ جَنَّتَانِ عَن يَمِينٖ وَشِمَالٖۖ كُلُواْ مِن رِّزۡقِ رَبِّكُمۡ وَٱشۡكُرُواْ لَهُۥۚ بَلۡدَةٞ طَيِّبَةٞ وَرَبٌّ غَفُورٞ ١٥

15. ನಿಶ್ಚಯವಾಗಿಯೂ ಸಬಾ ದೇಶದವರಿಗೆ[2] ಅವರ ವಾಸ್ತವ್ಯದಲ್ಲೇ ಒಂದು ದೃಷ್ಟಾಂತವಿತ್ತು. ಬಲಭಾಗದಲ್ಲಿ ಮತ್ತು ಎಡಭಾಗದಲ್ಲಿರುವ ಎರಡು ತೋಟಗಳು. "ನಿಮ್ಮ ಪರಿಪಾಲಕನು (ಅಲ್ಲಾಹು) ದಯಪಾಲಿಸಿದ ಆಹಾರವನ್ನು ತಿನ್ನಿರಿ ಮತ್ತು ಅವನಿಗೆ ಕೃತಜ್ಞರಾಗಿರಿ. ಉತ್ತಮ ದೇಶ ಮತ್ತು ಕ್ಷಮಿಸುವ ಪರಿಪಾಲಕ!"

---

فَأَعۡرَضُواْ فَأَرۡسَلۡنَا عَلَيۡهِمۡ سَيۡلَ ٱلۡعَرِمِ وَبَدَّلۡنَٰهُم بِجَنَّتَيۡهِمۡ جَنَّتَيۡنِ ذَوَاتَيۡ أُكُلٍ خَمۡطٖ وَأَثۡلٖ وَشَيۡءٖ مِّن سِدۡرٖ قَلِيلٖ ١٦

16. ಆದರೆ ಅವರು ನಿರ್ಲಕ್ಷಿಸಿದರು. ಆಗ ನಾವು ಅವರ ಕಡೆಗೆ ಪ್ರಬಲ ಪ್ರವಾಹವನ್ನು ಕಳುಹಿಸಿದೆವು. (ಆ ಪ್ರವಾಹದ ಮೂಲಕ) ಅವರ ಆ ಎರಡು (ಹಸಿರು) ತೋಟಗಳಿಗೆ ಬದಲಿಯಾಗಿ ಕಹಿ ಹಣ್ಣುಗಳು, ಪಕ್ಕೆ ಮರಗಳು ಮತ್ತು ಕೆಲವು ಬೋರೆ ಮರಗಳನ್ನು ಹೊಂದಿದ ಎರಡು ತೋಟಗಳನ್ನು ನೀಡಿದೆವು.[3]

---

ذَٰلِكَ جَزَيۡنَٰهُم بِمَا كَفَرُواْۖ وَهَلۡ نُجَٰزِيٓ إِلَّا ٱلۡكَفُورَ ١٧

17. ಇದು ಅವರ ಕೃತಘ್ನತೆಗೆ ನಾವು ನೀಡಿದ ಪ್ರತಿಫಲವಾಗಿದೆ. ಮಹಾ ಕೃತಘ್ನರಿಗೆ ಮಾತ್ರ ನಾವು ಇಂತಹ ಶಿಕ್ಷೆಗಳನ್ನು ನೀಡುತ್ತೇವೆ.

---

[1] ಜಿನ್ನ್‌ಗಳಿಗೆ ಅದೃಶ್ಯಜ್ಞಾನವಿದೆ, ಅವರು ಅದೃಶ್ಯವನ್ನು ತಿಳಿಯುತ್ತಾರೆಂದು ಸುಲೈಮಾನರ (ಅವರ ಮೇಲೆ ಶಾಂತಿಯಿರಲಿ) ಕಾಲದ ಕೆಲವು ಜನರು ನಂಬಿದ್ದರು. ಸುಲೈಮಾನರ (ಅವರ ಮೇಲೆ ಶಾಂತಿಯಿರಲಿ) ಮರಣದ ಮೂಲಕ ಈ ನಂಬಿಕೆ ಹುಸಿಯೆಂದು ಸಾಬೀತಾಯಿತು. ಸುಲೈಮಾನರು (ಅವರ ಮೇಲೆ ಶಾಂತಿಯಿರಲಿ) ತಮ್ಮ ಊರುಗೋಲಿನ ಆಸರೆಯಿಂದ ನಿಂತು ಜಿನ್ನ್‌ಗಳು ಕೆಲಸ ಮಾಡುವುದನ್ನು ವೀಕ್ಷಿಸುತ್ತಿದ್ದಾಗಲೇ ಮರಣಹೊಂದಿದರು. ಅವರು ನಿಧನರಾದ ವಿಷಯ ಜಿನ್ನ್‌ಗಳಿಗೆ ತಿಳಿಯಲಿಲ್ಲ. ಅವರು ತಮ್ಮನ್ನು ವೀಕ್ಷಿಸುತ್ತಲೇ ಇದ್ದಾರೆಂದು ಜಿನ್ನ್‌ಗಳು ಭಾವಿಸಿದ್ದರು. ಆದರೆ ಸುಲೈಮಾನರ (ಅವರ ಮೇಲೆ ಶಾಂತಿಯಿರಲಿ) ಊರುಗೋಲನ್ನು ಗೆದ್ದಲುಗಳು ತಿಂದು ಸುಲೈಮಾನರು ನೆಲಕ್ಕೆ ಬಿದ್ದಾಗ ಅವರು ನಿಧನರಾಗಿದ್ದಾರೆಂದು ಜಿನ್ನ್‌ಗಳಿಗೆ ತಿಳಿಯಿತು.

[2] ಪ್ರಾಚೀನ ಸಬಾ ಸಾಮ್ರಾಜ್ಯ ಎಂದರೆ ಇಂದಿನ ಯಮನ್ ದೇಶ.

[3] ಅವರು ಬೆಟ್ಟದಿಂದ ಹರಿದು ಬರುವ ನೀರನ್ನು ತಡೆಗಟ್ಟಿ ಕೃಷಿಗೆ ಉಪಯೋಗಿಸಲು ಅಣೆಕಟ್ಟು ನಿರ್ಮಿಸಿದ್ದರು. ಬೆಟ್ಟದಿಂದ ಉಕ್ಕಿ ಬಂದ ಪ್ರವಾಹದಿಂದ ಈ ಅಣೆಕಟ್ಟು ಒಡೆದು ಅವರ ಹೊಲ ಬೆಳೆಗಳೆಲ್ಲವೂ ನಾಶವಾದವು. ನಂತರ ಅಲ್ಲಿ ಕಹಿ ಹಣ್ಣುಗಳು, ಪಕ್ಕೆ ಮರಗಳು ಮತ್ತು ಬೋರೆ ಮರಗಳ ಹೊರತು ಬೇರೇನೂ ಬೆಳೆಯಲಿಲ್ಲ.

18. ನಾವು ಅವರ ಮತ್ತು ನಾವು ಸಮೃದ್ಧಿ ನೀಡಿದ ಊರುಗಳ (ಪ್ಯಾಲಸ್ತೀನ್-ಸಿರಿಯಾ) ನಡುವೆ ಅನೇಕ ಊರುಗಳನ್ನು ಸ್ಥಾಪಿಸಿದೆವು.[1] ಅಲ್ಲಿ ನಾವು (ನಿಶ್ಚಿತ ಅಂತರದಲ್ಲಿ) ಕೆಲವು ತಂಗುದಾಣಗಳನ್ನು ನಿರ್ಣಯಿಸಿದೆವು. (ನಾವು ಹೇಳಿದೆವು): "ಹಗಲು-ರಾತ್ರಿ ಅವುಗಳ ಮೂಲಕ ನಿರ್ಭಯವಾಗಿ ಪ್ರಯಾಣ ಮಾಡಿರಿ."

وَجَعَلۡنَا بَيۡنَهُمۡ وَبَيۡنَ ٱلۡقُرَى ٱلَّتِي بَٰرَكۡنَا فِيهَا قُرٗى ظَٰهِرَةٗ وَقَدَّرۡنَا فِيهَا ٱلسَّيۡرَۖ سِيرُواْ فِيهَا لَيَالِيَ وَأَيَّامًا ءَامِنِينَ ١٨

19. ಆದರೆ ಅವರು ಹೇಳಿದರು: "ಓ ನಮ್ಮ ಪರಿಪಾಲಕನೇ! ನಮ್ಮ ಪ್ರಯಾಣದ ದೂರವನ್ನು ಹೆಚ್ಚಿಸು."[2] ಅವರು ಸ್ವತಃ ಅವರೊಂದಿಗೇ ಅಕ್ರಮವೆಸಗಿದರು. ನಂತರ ನಾವು ಅವರನ್ನು ದಂತಕಥೆಗಳನ್ನಾಗಿ ಮಾಡಿದೆವು ಮತ್ತು ಅವರನ್ನು ಸಂಪೂರ್ಣವಾಗಿ ಚಿಂದಿ ಮಾಡಿದೆವು. ತಾಳ್ಮೆ ಮತ್ತು ಕೃತಜ್ಞತಾ-ಭಾವವುಳ್ಳ ಪ್ರತಿಯೊಬ್ಬರಿಗೂ ಅದರಲ್ಲಿ ದೃಷ್ಟಾಂತಗಳಿವೆ.

فَقَالُواْ رَبَّنَا بَٰعِدۡ بَيۡنَ أَسۡفَارِنَا وَظَلَمُوٓاْ أَنفُسَهُمۡ فَجَعَلۡنَٰهُمۡ أَحَادِيثَ وَمَزَّقۡنَٰهُمۡ كُلَّ مُمَزَّقٍۚ إِنَّ فِي ذَٰلِكَ لَأٓيَٰتٖ لِّكُلِّ صَبَّارٖ شَكُورٖ ١٩

20. ಇಬ್ಲೀಸನು ಅವರ ಮೇಲಿದ್ದ ತನ್ನ ಗುಮಾನಿಯನ್ನು ನಿಜಗೊಳಿಸಿದನು. ಸತ್ಯವಿಶ್ವಾಸಿಗಳ ಒಂದು ಗುಂಪನ್ನು ಹೊರತುಪಡಿಸಿ ಎಲ್ಲರೂ ಅವನನ್ನು ಹಿಂಬಾಲಿಸಿದರು.

وَلَقَدۡ صَدَّقَ عَلَيۡهِمۡ إِبۡلِيسُ ظَنَّهُۥ فَٱتَّبَعُوهُ إِلَّا فَرِيقٗا مِّنَ ٱلۡمُؤۡمِنِينَ ٢٠

21. ಅವನಿಗೆ ಅವರ ಮೇಲೆ ಯಾವುದೇ ಅಧಿಕಾರವಿರಲಿಲ್ಲ. ಇದು ನಾವು ಪರಲೋಕದಲ್ಲಿ ವಿಶ್ವಾಸವಿಡುವವರನ್ನು ಮತ್ತು ಅದರ ಬಗ್ಗೆ ಸಂಶಯವಿರುವವರನ್ನು ಬೇರ್ಪಡಿಸಿ ತಿಳಿಯುವುದಕ್ಕಾಗಿತ್ತು. ನಿಮ್ಮ ಪರಿಪಾಲಕನು (ಅಲ್ಲಾಹು) ಎಲ್ಲಾ ವಿಷಯಗಳನ್ನೂ ಗಮನಿಸುವವನಾಗಿದ್ದಾನೆ.

وَمَا كَانَ لَهُۥ عَلَيۡهِم مِّن سُلۡطَٰنٍ إِلَّا لِنَعۡلَمَ مَن يُؤۡمِنُ بِٱلۡأٓخِرَةِ مِمَّنۡ هُوَ مِنۡهَا فِي شَكّٖۗ وَرَبُّكَ عَلَىٰ كُلِّ شَيۡءٍ حَفِيظٞ ٢١

22. ಹೇಳಿರಿ: "ಅಲ್ಲಾಹನನ್ನು ಬಿಟ್ಟು ನೀವು (ನಿಮ್ಮ ದೇವರುಗಳೆಂದು) ವಾದಿಸುತ್ತಿರುವ ಎಲ್ಲರನ್ನೂ ಕರೆದು ಪ್ರಾರ್ಥಿಸಿರಿ. ಆಕಾಶಗಳಲ್ಲಿ ಅಥವಾ ಭೂಮಿಯಲ್ಲಿರುವ ಒಂದು ಅಣುವಿನ ತೂಕದಷ್ಟಿರುವ ವಸ್ತು ಕೂಡ ಅವರ ಅಧಿಕಾರದಲ್ಲಿಲ್ಲ. ಭೂಮ್ಯಾಕಾಶಗಳಲ್ಲಿ ಅವರಿಗೆ ಯಾವುದೇ ಪಾಲುದಾರಿಕೆಯಿಲ್ಲ. ಅವರು ಅವನ ಸಹಾಯಕರು ಕೂಡ ಅಲ್ಲ."

قُلِ ٱدۡعُواْ ٱلَّذِينَ زَعَمۡتُم مِّن دُونِ ٱللَّهِ لَا يَمۡلِكُونَ مِثۡقَالَ ذَرَّةٖ فِي ٱلسَّمَٰوَٰتِ وَلَا فِي ٱلۡأَرۡضِ وَمَا لَهُمۡ فِيهِمَا مِن شِرۡكٖ وَمَا لَهُۥ مِنۡهُم مِّن ظَهِيرٖ ٢٢

23. ಅಲ್ಲಾಹು ಯಾರಿಗೆ (ಶಿಫಾರಸು ಮಾಡಲು) ಅನುಮತಿ ನೀಡಿದ್ದಾನೋ ಅವರಿಗಲ್ಲದೆ ಬೇರೆ ಯಾರಿಗೂ ಅವನ ಬಳಿ

وَلَا تَنفَعُ ٱلشَّفَٰعَةُ عِندَهُۥٓ إِلَّا لِمَنۡ أَذِنَ لَهُۥۚ حَتَّىٰٓ إِذَا فُزِّعَ عَن قُلُوبِهِمۡ قَالُواْ مَاذَا قَالَ

[1] ಇದು ಸಿರಿಯಾ ಮತ್ತು ಯಮನ್‌ನ ನಡುವಿನಲ್ಲಿದ್ದ ಹೆದ್ದಾರಿಯ ಬಗ್ಗೆಯಾಗಿದೆ. ಈ ಹೆದ್ದಾರಿಯಲ್ಲಿ 4,700 ಊರುಗಳಿದ್ದವು ಎಂದು ಹೇಳಲಾಗುತ್ತದೆ. ಇಷ್ಟೊಂದು ದೊಡ್ಡ ಸಂಖ್ಯೆಯ ಊರುಗಳಿದ್ದುದರಿಂದ ಈ ದಾರಿಯಲ್ಲಿ ಪ್ರಯಾಣ ಮಾಡುವವರಿಗೆ ಆಹಾರ-ಪಾನೀಯ ಮತ್ತು ವಸತಿಗಾಗಿ ಪರದಾಡಬೇಕಾಗಿ ಬರುತ್ತಿರಲಿಲ್ಲ. ಹಾಗೆಯೇ ಕಳ್ಳರು ದರೋಡೆಕೋರರ ಭಯವೂ ಇರಲಿಲ್ಲ.

[2] ಯಮನ್ ನಿವಾಸಿಗಳಿಗೆ ಈ ಹೆದ್ದಾರಿ ಪ್ರಯಾಣವು ಸುರಕ್ಷಿತ ಮತ್ತು ಅನುಕೂಲಕರವಾಗಿದ್ದರೂ ಸಹ ಅವರು ಅದನ್ನು ಅಸಹ್ಯಪಟ್ಟರು. ಈ ಹೆದ್ದಾರಿ ಕೂಡ ಜಗತ್ತಿನ ಇತರ ಹೆದ್ದಾರಿಗಳಂತೆ ದುರ್ಗಮ ಮತ್ತು ಕಷ್ಟಕರವಾಗಿಬೇಕೆಂದು ಅವರು ಬಯಸಿದರು.

ಶಿಫಾರಸು ಪ್ರಯೋಜನ ಪಡುವುದಿಲ್ಲ. ಎಲ್ಲಿಯವರೆಗೆಂದರೆ, ಅವರ (ದೇವದೂತರುಗಳ) ಹೃದಯಗಳಿಂದ ಭೀತಿಯು ದೂರವಾದಾಗ ಅವರು ಕೇಳುವರು: “ನಿಮ್ಮ ಪರಿಪಾಲಕ (ಅಲ್ಲಾಹು) ಏನು ಹೇಳಿದನು?” ಅವರು ಉತ್ತರಿಸುವರು: “ಸತ್ಯವನ್ನು. ಅವನು ಪರಮೋನ್ನತನು ಮತ್ತು ಮಹಾ ಮಹಿಮನಾಗಿದ್ದಾನೆ.”

رَبُّكُمۡۖ قَالُواْ ٱلۡحَقَّۖ وَهُوَ ٱلۡعَلِيُّ ٱلۡكَبِيرُ ٢٣

---

24. ಕೇಳಿರಿ: “ಭೂಮ್ಯಾಕಾಶಗಳಿಂದ ನಿಮಗೆ ಉಪಜೀವನವನ್ನು ಒದಗಿಸುವುದು ಯಾರು?” ಹೇಳಿರಿ: “ಅಲ್ಲಾಹು. ನಿಶ್ಚಯವಾಗಿಯೂ ಒಂದೋ ನಾವು ಅಥವಾ ನೀವು ಸನ್ಮಾರ್ಗದಲ್ಲಿ ಅಥವಾ ಸ್ಪಷ್ಟ ದುರ್ಮಾರ್ಗದಲ್ಲಿದ್ದೇವೆ.”

قُلۡ مَن يَرۡزُقُكُم مِّنَ ٱلسَّمَٰوَٰتِ وَٱلۡأَرۡضِۖ قُلِ ٱللَّهُۖ وَإِنَّآ أَوۡ إِيَّاكُمۡ لَعَلَىٰ هُدًى أَوۡ فِي ضَلَٰلٖ مُّبِينٖ ٢٤

---

25. ಹೇಳಿರಿ: “ನಾವು ಮಾಡಿದ ಅಪರಾಧಗಳ ಬಗ್ಗೆ ನಿಮ್ಮೊಡನೆ ಪ್ರಶ್ನಿಸಲಾಗುವುದಿಲ್ಲ. ನೀವು ಮಾಡುತ್ತಿರುವ ಅಪರಾಧಗಳ ಬಗ್ಗೆ ನಮ್ಮೊಡನೆಯೂ ಪ್ರಶ್ನಿಸಲಾಗುವುದಿಲ್ಲ.”

قُل لَّا تُسۡـَٔلُونَ عَمَّآ أَجۡرَمۡنَا وَلَا نُسۡـَٔلُ عَمَّا تَعۡمَلُونَ ٢٥

---

26. ಹೇಳಿರಿ: “ನಮ್ಮ ಪರಿಪಾಲಕನು (ಅಲ್ಲಾಹು) ನಮ್ಮನ್ನು ಪರಸ್ಪರ ಒಟ್ಟುಗೂಡಿಸುವನು. ನಂತರ ನಮ್ಮ ನಡುವೆ ಸರಿಯಾದ ತೀರ್ಪು ನೀಡುವನು. ಅವನು ತೀರ್ಪುಗಾರನು ಮತ್ತು ಸರ್ವಜ್ಞನಾಗಿದ್ದಾನೆ.”

قُلۡ يَجۡمَعُ بَيۡنَنَا رَبُّنَا ثُمَّ يَفۡتَحُ بَيۡنَنَا بِٱلۡحَقِّ وَهُوَ ٱلۡفَتَّاحُ ٱلۡعَلِيمُ ٢٦

---

27. ಹೇಳಿರಿ: “ನೀವು ಅಲ್ಲಾಹನ ಸಹಭಾಗಿಗಳೆಂದು ವಾದಿಸುತ್ತಾ ಅವನ ಜೊತೆಗೆ ಸೇರಿಸಿದ (ನಿಮ್ಮ ದೇವರುಗಳನ್ನು) ತೋರಿಸಿಕೊಡಿ. ಇಲ್ಲ (ಅವನಿಗೆ ಸಹಭಾಗಿಗಳೇ ಇಲ್ಲ)! ವಾಸ್ತವವಾಗಿ, ಅವನು ಪ್ರಬಲನು ಮತ್ತು ವಿವೇಕಪೂರ್ಣನಾದ ಅಲ್ಲಾಹನಾಗಿದ್ದಾನೆ.”

قُلۡ أَرُونِيَ ٱلَّذِينَ أَلۡحَقۡتُم بِهِۦ شُرَكَآءَۖ كَلَّاۚ بَلۡ هُوَ ٱللَّهُ ٱلۡعَزِيزُ ٱلۡحَكِيمُ ٢٧

---

28. ನಾವು ನಿಮ್ಮನ್ನು ಸಂಪೂರ್ಣ ಮನುಕುಲಕ್ಕೆ ಸುವಾರ್ತೆ ತಿಳಿಸಲು ಮತ್ತು ಮುನ್ನೆಚ್ಚರಿಕೆ ನೀಡಲು ಕಳುಹಿಸಿದ್ದೇವೆ. ಆದರೆ ಜನರಲ್ಲಿ ಹೆಚ್ಚಿನವರು ತಿಳಿದಿಲ್ಲ.

وَمَآ أَرۡسَلۡنَٰكَ إِلَّا كَآفَّةٗ لِّلنَّاسِ بَشِيرٗا وَنَذِيرٗا وَلَٰكِنَّ أَكۡثَرَ ٱلنَّاسِ لَا يَعۡلَمُونَ ٢٨

---

29. ಅವರು ಕೇಳುತ್ತಾರೆ: “ನೀವು ಸತ್ಯವಂತರಾಗಿದ್ದರೆ ಈ ಎಚ್ಚರಿಕೆಯು ಯಾವಾಗ ಬರುತ್ತದೆ ಎಂದು ಹೇಳಿರಿ.”

وَيَقُولُونَ مَتَىٰ هَٰذَا ٱلۡوَعۡدُ إِن كُنتُمۡ صَٰدِقِينَ ٢٩

---

30. ಹೇಳಿರಿ: “ನಿಮಗೆ ನಿಶ್ಚಯಿಸಲಾದ ಒಂದು ದಿನವಿದೆ. ಅದರಿಂದ ಒಂದು ಕ್ಷಣ ಹಿಂದಕ್ಕೆ ಸರಿಯಲು ಅಥವಾ ಮುಂದಕ್ಕೆ ಹೋಗಲು ನಿಮಗೆ ಸಾಧ್ಯವಿಲ್ಲ.”

قُل لَّكُم مِّيعَادُ يَوۡمٖ لَّا تَسۡتَـٔۡخِرُونَ عَنۡهُ سَاعَةٗ وَلَا تَسۡتَقۡدِمُونَ ٣٠

---

31. ಸತ್ಯನಿಷೇಧಿಗಳು ಹೇಳಿದರು: “ನಾವು ಈ ಕುರ್‌ಆನ್‌ನಲ್ಲಿ ಅಥವಾ

وَقَالَ ٱلَّذِينَ كَفَرُواْ لَن نُّؤۡمِنَ بِهَٰذَا ٱلۡقُرۡءَانِ

ಇದಕ್ಕಿಂತ ಮೊದಲು ಅವತೀರ್ಣವಾದ ಗ್ರಂಥಗಳಲ್ಲಿ ಎಂದಿಗೂ ವಿಶ್ವಾಸವಿಡುವುದಿಲ್ಲ." (ಪ್ರವಾದಿಯವರೇ) ಈ ಅಕ್ರಮಿಗಳನ್ನು (ಪುನರುತ್ಥಾನ ದಿನ) ಅವರ ಪರಿಪಾಲಕನ (ಅಲ್ಲಾಹನ) ಮುಂದೆ ನಿಲ್ಲಿಸಲಾಗುವ ದೃಶ್ಯವನ್ನು ನೀವು ನೋಡುತ್ತಿದ್ದರೆ! ಅವರು ಪರಸ್ಪರ ಒಬ್ಬರು ಇನ್ನೊಬ್ಬರ ಮೇಲೆ ಆರೋಪ ಹೊರಿಸುವರು. ದುರ್ಬಲರು ಪ್ರಬಲರೊಡನೆ ಹೇಳುವರು: "ನೀವಿಲ್ಲದಿರುತ್ತಿದ್ದರೆ ನಾವು ಸತ್ಯವಿಶ್ವಾಸಿಗಳಾಗುತ್ತಿದ್ದೆವು."

وَلَا بِٱلَّذِي بَيۡنَ يَدَيۡهِۗ وَلَوۡ تَرَىٰٓ إِذِ ٱلظَّٰلِمُونَ
مَوۡقُوفُونَ عِندَ رَبِّهِمۡ يَرۡجِعُ بَعۡضُهُمۡ إِلَىٰ
بَعۡضٍ ٱلۡقَوۡلَ يَقُولُ ٱلَّذِينَ ٱسۡتُضۡعِفُواْ لِلَّذِينَ
ٱسۡتَكۡبَرُواْ لَوۡلَآ أَنتُمۡ لَكُنَّا مُؤۡمِنِينَ ٣١

---

32. ಪ್ರಬಲರು ದುರ್ಬಲರೊಡನೆ ಹೇಳುವರು: "ನಿಮ್ಮ ಬಳಿಗೆ ಸನ್ಮಾರ್ಗವು ಬಂದ ಬಳಿಕ ನಾವು ನಿಮ್ಮನ್ನು ಅದರಿಂದ ತಡೆದಿದ್ದೇವೆಯೇ? ಅಲ್ಲ. ವಾಸ್ತವವಾಗಿ ನೀವೇ ಅಪರಾಧಿಗಳು."

قَالَ ٱلَّذِينَ ٱسۡتَكۡبَرُواْ لِلَّذِينَ ٱسۡتُضۡعِفُوٓاْ أَنَحۡنُ
صَدَدۡنَٰكُمۡ عَنِ ٱلۡهُدَىٰ بَعۡدَ إِذۡ جَآءَكُمۖ بَلۡ
كُنتُم مُّجۡرِمِينَ ٣٢

---

33. ದುರ್ಬಲರು ಪ್ರಬಲರೊಡನೆ ಹೇಳುವರು: "ಅಲ್ಲ, ವಾಸ್ತವವಾಗಿ ಅದು ನೀವು ಹಗಲು-ರಾತ್ರಿ ಮಾಡುತ್ತಿದ್ದ ಪಿತೂರಿಯ ಫಲವಾಗಿತ್ತು. ನಾವು ಅಲ್ಲಾಹನನ್ನು ನಿಷೇಧಿಸಲು ಮತ್ತು ಅವನಿಗೆ ಸರಿಸಾಟಿಗಳನ್ನು ನಿಶ್ಚಯಿಸಲು ನೀವು ನಮ್ಮೊಂದಿಗೆ ಆದೇಶಿಸುತ್ತಿದ್ದ ಸಂದರ್ಭ(ವನ್ನು ಸ್ಮರಿಸಿ)." ಶಿಕ್ಷೆಯನ್ನು ಕಾಣುವಾಗ ಅವರು ತಮ್ಮ ಹತಾಶೆಯನ್ನು ಮನಸ್ಸಿನಲ್ಲೇ ಮುಚ್ಚಿಡುವರು. ನಾವು ಸತ್ಯನಿಷೇಧಿಗಳ ಕೊರಳುಗಳಲ್ಲಿ ಸಂಕೋಲೆಗಳನ್ನು ಹಾಕುವೆವು. ಅವರು ಮಾಡಿದ ಕರ್ಮಗಳ ಪ್ರತಿಫಲವನ್ನಲ್ಲದೆ ಬೇರೇನಾದರೂ ಅವರಿಗೆ ನೀಡಲಾಗುವುದೇ?

وَقَالَ ٱلَّذِينَ ٱسۡتُضۡعِفُواْ لِلَّذِينَ ٱسۡتَكۡبَرُواْ بَلۡ
مَكۡرُ ٱلَّيۡلِ وَٱلنَّهَارِ إِذۡ تَأۡمُرُونَنَآ أَن نَّكۡفُرَ
بِٱللَّهِ وَنَجۡعَلَ لَهُۥٓ أَندَادٗاۚ وَأَسَرُّواْ ٱلنَّدَامَةَ لَمَّا
رَأَوُاْ ٱلۡعَذَابَۚ وَجَعَلۡنَا ٱلۡأَغۡلَٰلَ فِيٓ أَعۡنَاقِ ٱلَّذِينَ
كَفَرُواْۖ هَلۡ يُجۡزَوۡنَ إِلَّا مَا كَانُواْ يَعۡمَلُونَ ٣٣

---

34. ನಾವು ಯಾವುದೇ ಊರಿಗೆ ಒಬ್ಬ ಮುನ್ನೆಚ್ಚರಿಕೆಗಾರನನ್ನು (ಪ್ರವಾದಿಯನ್ನು) ಕಳುಹಿಸಿದಾಗಲೆಲ್ಲಾ ಅಲ್ಲಿನ ಸಂಪನ್ನರು ಹೇಳುತ್ತಿದ್ದರು: "ನಿಮ್ಮನ್ನು ಯಾವುದರೊಂದಿಗೆ ಕಳುಹಿಸಲಾಗಿದೆಯೋ ಅದನ್ನು ನಾವು ನಿಷೇಧಿಸಿದ್ದೇವೆ."

وَمَآ أَرۡسَلۡنَا فِي قَرۡيَةٖ مِّن نَّذِيرٍ إِلَّا قَالَ مُتۡرَفُوهَآ
إِنَّا بِمَآ أُرۡسِلۡتُم بِهِۦ كَٰفِرُونَ ٣٤

---

35. ಅವರು ಹೇಳಿದರು: "ನಮಗೆ ಯಥೇಷ್ಟ ಆಸ್ತಿ ಮತ್ತು ಮಕ್ಕಳಿದ್ದಾರೆ. ನಮ್ಮನ್ನು ಶಿಕ್ಷಿಸಲು ಯಾರಿಗೂ ಸಾಧ್ಯವಿಲ್ಲ."

وَقَالُواْ نَحۡنُ أَكۡثَرُ أَمۡوَٰلٗا وَأَوۡلَٰدٗا وَمَا نَحۡنُ
بِمُعَذَّبِينَ ٣٥

---

36. ಹೇಳಿರಿ: "ನಿಶ್ಚಯವಾಗಿಯೂ ನನ್ನ ಪರಿಪಾಲಕನು (ಅಲ್ಲಾಹು) ಅವನು ಇಚ್ಛಿಸುವವರಿಗೆ ಉಪಜೀವನವನ್ನು ವಿಶಾಲಗೊಳಿಸುತ್ತಾನೆ ಮತ್ತು ಅವನು ಇಚ್ಛಿಸುವವರಿಗೆ ಇಕ್ಕಟ್ಟುಗೊಳಿಸುತ್ತಾನೆ. ಆದರೆ ಜನರಲ್ಲಿ ಹೆಚ್ಚಿನವರು ತಿಳಿಯುವುದಿಲ್ಲ."

قُلۡ إِنَّ رَبِّي يَبۡسُطُ ٱلرِّزۡقَ لِمَن يَشَآءُ وَيَقۡدِرُ
وَلَٰكِنَّ أَكۡثَرَ ٱلنَّاسِ لَا يَعۡلَمُونَ ٣٦

---

37. ನಿಮ್ಮ ಆಸ್ತಿ ಅಥವಾ ಮಕ್ಕಳು ನಿಮ್ಮನ್ನು ನಮಗೆ ಹತ್ತಿರಗೊಳಿಸುವುದಿಲ್ಲ. ಆದರೆ ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು

وَمَآ أَمۡوَٰلُكُمۡ وَلَآ أَوۡلَٰدُكُم بِٱلَّتِي تُقَرِّبُكُمۡ
عِندَنَا زُلۡفَىٰٓ إِلَّا مَنۡ ءَامَنَ وَعَمِلَ صَٰلِحٗا

ಯಾರೋ ಅವರಿಗೆ ಅವರು ಮಾಡಿದ ಕರ್ಮಗಳ ಇಮ್ಮಡಿ ಪ್ರತಿಫಲವನ್ನು ನೀಡಲಾಗುವುದು. ಅವರು ಉನ್ನತ ಸೌಧಗಳಲ್ಲಿ ನಿರ್ಭಯವಾಗಿರುವರು.

فَأُوْلَـٰٓئِكَ لَهُمۡ جَزَآءُ ٱلضِّعۡفِ بِمَا عَمِلُواْ وَهُمۡ
فِي ٱلۡغُرُفَٰتِ ءَامِنُونَ ٣٧

---

38. ನಮ್ಮ ವಚನಗಳನ್ನು ವಿರೂಪಗೊಳಿಸಲು ಪ್ರಯತ್ನಿಸುವವರು ಯಾರೋ ಅವರನ್ನು ಶಿಕ್ಷೆಯಲ್ಲಿ ಹಾಜರುಪಡಿಸಲಾಗುವುದು.

وَٱلَّذِينَ يَسۡعَوۡنَ فِيٓ ءَايَٰتِنَا مُعَٰجِزِينَ أُوْلَـٰٓئِكَ
فِي ٱلۡعَذَابِ مُحۡضَرُونَ ٣٨

---

39. ಹೇಳಿರಿ: “ನಿಶ್ಚಯವಾಗಿಯೂ ನನ್ನ ಪರಿಪಾಲಕನು (ಅಲ್ಲಾಹು) ಅವನ ದಾಸರಲ್ಲಿ ಅವನು ಇಚ್ಛಿಸುವವರಿಗೆ ಉಪಜೀವನವನ್ನು ವಿಶಾಲಗೊಳಿಸುತ್ತಾನೆ ಮತ್ತು ಅವನು ಇಚ್ಛಿಸುವವರಿಗೆ ಇಕ್ಕಟ್ಟುಗೊಳಿಸುತ್ತಾನೆ. ನೀವು ಏನೇ ಖರ್ಚು ಮಾಡಿದರೂ ಅವನು ಅದಕ್ಕೆ ಬದಲಿಯನ್ನು ನೀಡುವನು. ಅವನು ಉಪಜೀವನ ಒದಗಿಸುವವರಲ್ಲಿ ಅತಿಶ್ರೇಷ್ಠನಾಗಿದ್ದಾನೆ.”

قُلۡ إِنَّ رَبِّي يَبۡسُطُ ٱلرِّزۡقَ لِمَن يَشَآءُ مِنۡ
عِبَادِهِۦ وَيَقۡدِرُ لَهُۥۚ وَمَآ أَنفَقۡتُم مِّن شَيۡءٖ فَهُوَ
يُخۡلِفُهُۥۖ وَهُوَ خَيۡرُ ٱلرَّٰزِقِينَ ٣٩

---

40. ಅವನು ಅವರೆಲ್ಲರನ್ನೂ ಒಟ್ಟುಗೂಡಿಸುವ ದಿನ! ನಂತರ ಅವನು ದೇವದೂತರುಗಳೊಡನೆ ಕೇಳುವನು: “ಇವರು ನಿಮ್ಮನ್ನು ಆರಾಧಿಸುತ್ತಿದ್ದರೇ?”

وَيَوۡمَ يَحۡشُرُهُمۡ جَمِيعٗا ثُمَّ يَقُولُ لِلۡمَلَـٰٓئِكَةِ
أَهَـٰٓؤُلَآءِ إِيَّاكُمۡ كَانُواْ يَعۡبُدُونَ ٤٠

---

41. ಅವರು ಉತ್ತರಿಸುವರು: “ನೀನು ಪರಿಶುದ್ಧನು! ನಮ್ಮ ರಕ್ಷಕನು ನೀನೇ ಹೊರತು ಅವರಲ್ಲ. ವಾಸ್ತವವಾಗಿ, ಅವರು ಜಿನ್ನ್‌ಗಳನ್ನು ಆರಾಧಿಸುತ್ತಿದ್ದರು. ಅವರಲ್ಲಿ ಹೆಚ್ಚಿನವರು ಜಿನ್ನ್‌ಗಳಲ್ಲೇ ವಿಶ್ವಾಸವಿಟ್ಟಿದ್ದರು.”

قَالُواْ سُبۡحَٰنَكَ أَنتَ وَلِيُّنَا مِن دُونِهِمۖ بَلۡ كَانُواْ
يَعۡبُدُونَ ٱلۡجِنَّۖ أَكۡثَرُهُم بِهِم مُّؤۡمِنُونَ ٤١

---

42. ಇಂದು ನಿಮ್ಮಲ್ಲಿ ಪರಸ್ಪರ ಯಾರಿಗೂ ಸಹ ಯಾವುದೇ ಉಪಕಾರ ಅಥವಾ ತೊಂದರೆ ಮಾಡುವ ಶಕ್ತಿಯಿಲ್ಲ. ನಾವು ಅಕ್ರಮಿಗಳೊಡನೆ ಹೇಳುವೆವು: “ನೀವು ನಿಷೇಧಿಸುತ್ತಿದ್ದ ನರಕ ಶಿಕ್ಷೆಯ ರುಚಿಯನ್ನು ನೋಡಿರಿ.”

فَٱلۡيَوۡمَ لَا يَمۡلِكُ بَعۡضُكُمۡ لِبَعۡضٖ نَّفۡعٗا وَلَا
ضَرّٗا وَنَقُولُ لِلَّذِينَ ظَلَمُواْ ذُوقُواْ عَذَابَ ٱلنَّارِ
ٱلَّتِي كُنتُم بِهَا تُكَذِّبُونَ ٤٢

---

43. ಅವರಿಗೆ ನಮ್ಮ ಸ್ಪಷ್ಟ ವಚನಗಳನ್ನು ಓದಿಕೊಡಲಾದರೆ ಅವರು ಹೇಳುವರು: “ನಿಮ್ಮ ಪೂರ್ವಜರು ಏನು ಆರಾಧಿಸುತ್ತಿದ್ದರೋ ಅದರಿಂದ ನಿಮ್ಮನ್ನು ತಡೆಯುವುದೇ ಈತನ ಉದ್ದೇಶವಾಗಿದೆ.” ಅವರು ಹೇಳಿದರು: “ಇದು ಸ್ವಯಂ ರಚಿಸಲಾದ ಒಂದು ಕಟ್ಟುಕಥೆಯಾಗಿದೆ.” ಸತ್ಯನಿಷೇಧಿಗಳ ಬಳಿಗೆ ಸತ್ಯವು ಬಂದಾಗ ಅವರು ಅದರ ಬಗ್ಗೆ, “ಇದು ಸ್ಪಷ್ಟ ಮಾಟಗಾರಿಕೆಯಾಗಿದೆ” ಎಂದು ಹೇಳಿದರು.

وَإِذَا تُتۡلَىٰ عَلَيۡهِمۡ ءَايَٰتُنَا بَيِّنَٰتٖ قَالُواْ مَا هَٰذَآ
إِلَّا رَجُلٞ يُرِيدُ أَن يَصُدَّكُمۡ عَمَّا كَانَ يَعۡبُدُ
ءَابَآؤُكُمۡ وَقَالُواْ مَا هَٰذَآ إِلَّآ إِفۡكٞ مُّفۡتَرٗىۚ
وَقَالَ ٱلَّذِينَ كَفَرُواْ لِلۡحَقِّ لَمَّا جَآءَهُمۡ إِنۡ
هَٰذَآ إِلَّا سِحۡرٞ مُّبِينٞ ٤٣

---

44. ಅವರು (ಮಕ್ಕಾ ನಿವಾಸಿಗಳು) ಓದಿ ತಿಳಿಯುವಂತಹ ಯಾವುದೇ ಗ್ರಂಥವನ್ನು ನಾವು ಅವರಿಗೆ ನೀಡಿಲ್ಲ. (ಪ್ರವಾದಿಯವರೇ)

وَمَآ ءَاتَيۡنَٰهُم مِّن كُتُبٖ يَدۡرُسُونَهَاۖ وَمَآ أَرۡسَلۡنَآ

إِلَيۡهِم قَبۡلَكَ مِن نَّذِيرٖ ﴿٤٤﴾

ನಿಮಗಿಂತ ಮೊದಲು ಅವರ ಬಳಿಗೆ ನಾವು ಯಾವುದೇ ಮುನ್ನೆ-ಚ್ಚರಿಕೆಗಾರನನ್ನು ಕಳುಹಿಸಿಲ್ಲ.

---

وَكَذَّبَ ٱلَّذِينَ مِن قَبۡلِهِمۡ وَمَا بَلَغُواْ مِعۡشَارَ مَآ ءَاتَيۡنَٰهُمۡ فَكَذَّبُواْ رُسُلِيۖ فَكَيۡفَ كَانَ نَكِيرِ ﴿٤٥﴾

45. ಇವರಿಗಿಂತ ಮೊದಲಿನವರೂ ನಿಷೇಧಿಸಿದ್ದರು. ಅವರಿಗೆ ನಾವು ನೀಡಿದ ಹತ್ತರಲ್ಲಿ ಒಂದಂಶವನ್ನೂ ಇವರು (ಮಕ್ಕಾ ನಿವಾಸಿಗಳು) ತಲುಪಿಲ್ಲ. ಆದರೂ ಅವರು ನಮ್ಮ ಸಂದೇಶವಾಹಕರನ್ನು ನಿಷೇಧಿಸಿದರು. ಆಗ ನನ್ನ ಶಿಕ್ಷೆಯು ಹೇಗಿತ್ತು (ಎಂದು ನೋಡಿರಿ).

---

قُلۡ إِنَّمَآ أَعِظُكُم بِوَٰحِدَةٍۖ أَن تَقُومُواْ لِلَّهِ مَثۡنَىٰ وَفُرَٰدَىٰ ثُمَّ تَتَفَكَّرُواْۚ مَا بِصَاحِبِكُم مِّن جِنَّةٍۚ إِنۡ هُوَ إِلَّا نَذِيرٞ لَّكُم بَيۡنَ يَدَيۡ عَذَابٖ شَدِيدٖ ﴿٤٦﴾

46. ಹೇಳಿರಿ: "ನಾನು ನಿಮಗೆ ಒಂದು ವಿಷಯವನ್ನು ಮಾತ್ರ ಉಪದೇಶ ಮಾಡುತ್ತೇನೆ. ನೀವು (ನಿಮ್ಮ ಹಟವನ್ನು ತೊರೆದು) ಅಲ್ಲಾಹನಿಗಾಗಿ ಇಬ್ಬಿಬ್ಬರು ಅಥವಾ ಒಬ್ಬೊಬ್ಬರು ನಿಲ್ಲಿರಿ. ನಂತರ ಚೆನ್ನಾಗಿ ಆಲೋಚಿಸಿರಿ. ನಿಮ್ಮ ಈ ಗೆಳೆಯನಿಗೆ (ಪ್ರವಾದಿಗೆ) ಯಾವುದೇ ಬುದ್ಧಿಭ್ರಮಣೆಯಿಲ್ಲ. ಅವರು ನಿಮಗೆ ಒಂದು ಭಯಾನಕ ಶಿಕ್ಷೆಯು ಆಗಮಿಸುವುದಕ್ಕೆ ಮೊದಲೇ ಅದರ ಬಗ್ಗೆ ಮುನ್ನೆಚ್ಚರಿಕೆ ನೀಡುವವರಾಗಿದ್ದಾರೆ."

---

قُلۡ مَا سَأَلۡتُكُم مِّنۡ أَجۡرٖ فَهُوَ لَكُمۡۖ إِنۡ أَجۡرِيَ إِلَّا عَلَى ٱللَّهِۖ وَهُوَ عَلَىٰ كُلِّ شَيۡءٖ شَهِيدٞ ﴿٤٧﴾

47. ಹೇಳಿರಿ: "ನಾನು ನಿಮ್ಮೊಂದಿಗೆ ಏನಾದರೂ ಪ್ರತಿಫಲವನ್ನು ಬೇಡಿದ್ದರೆ ಅದು ನಿಮಗೋಸ್ಕರವೇ ಆಗಿದೆ. ನನಗೆ ಪ್ರತಿಫಲ ನೀಡಬೇಕಾದವನು ಅಲ್ಲಾಹು ಮಾತ್ರ. ಅವನು ಎಲ್ಲಾ ವಿಷಯಗಳಿಗೂ ಸಾಕ್ಷಿಯಾಗಿದ್ದಾನೆ."

---

قُلۡ إِنَّ رَبِّي يَقۡذِفُ بِٱلۡحَقِّ عَلَّٰمُ ٱلۡغُيُوبِ ﴿٤٨﴾

48. ಹೇಳಿರಿ: "ನಿಶ್ಚಯವಾಗಿಯೂ ನನ್ನ ಪರಿಪಾಲಕನು (ಅಲ್ಲಾಹು) ಸತ್ಯವನ್ನು ಅವತೀರ್ಣಗೊಳಿಸುತ್ತಾನೆ. ಅವನು ಅದೃಶ್ಯ ವಿಷಯಗಳನ್ನು ಸೂಕ್ಷ್ಮವಾಗಿ ತಿಳಿದವನಾಗಿದ್ದಾನೆ."

---

قُلۡ جَآءَ ٱلۡحَقُّ وَمَا يُبۡدِئُ ٱلۡبَٰطِلُ وَمَا يُعِيدُ ﴿٤٩﴾

49. ಹೇಳಿರಿ: "ಸತ್ಯವು ಬಂದಿದೆ. ಅಸತ್ಯಕ್ಕೆ (ಈವರೆಗೆ) ಏನೂ ಮಾಡಲು ಸಾಧ್ಯವಾಗಿಲ್ಲ; ಇನ್ನು ಸಾಧ್ಯವಾಗುವುದೂ ಇಲ್ಲ."

---

قُلۡ إِن ضَلَلۡتُ فَإِنَّمَآ أَضِلُّ عَلَىٰ نَفۡسِيۖ وَإِنِ ٱهۡتَدَيۡتُ فَبِمَا يُوحِيٓ إِلَيَّ رَبِّيٓۚ إِنَّهُۥ سَمِيعٞ قَرِيبٞ ﴿٥٠﴾

50. ಹೇಳಿರಿ: "ನಾನು ದಾರಿತಪ್ಪಿದ್ದರೆ ನಾನು ದಾರಿತಪ್ಪಿದ ದೋಷವು ನನಗೇ ಆಗಿದೆ. ಆದರೆ ನಾನೇನಾದರೂ ಸನ್ಮಾರ್ಗದಲ್ಲಿದ್ದರೆ ಅದು ನನ್ನ ಪರಿಪಾಲಕನು (ಅಲ್ಲಾಹು) ನನಗೆ ನೀಡುತ್ತಿರುವ ದಿವ್ಯಸಂದೇಶದ ಕಾರಣದಿಂದಾಗಿದೆ. ನಿಶ್ಚಯವಾಗಿಯೂ ಅವನು ಕೇಳುವವನು ಮತ್ತು ಬಹಳ ಸಮೀಪದಲ್ಲಿರುವವನಾಗಿದ್ದಾನೆ."

---

وَلَوۡ تَرَىٰٓ إِذۡ فَزِعُواْ فَلَا فَوۡتَ وَأُخِذُواْ مِن مَّكَانٖ قَرِيبٖ ﴿٥١﴾

51. (ಪುನರುತ್ಥಾನ ದಿನದಂದು) ಸತ್ಯನಿಷೇಧಿಗಳು ಭಯದಿಂದ ನಡುಗುವ ದೃಶ್ಯವನ್ನು ನೀವು ನೋಡುತ್ತಿದ್ದರೆ! ಅವರಿಗೆ ತಪ್ಪಿಸಿಕೊಳ್ಳುವ ಯಾವುದೇ ಅವಕಾಶವಿರುವುದಿಲ್ಲ. ಹತ್ತಿರದ ಸ್ಥಳದಿಂದಲೇ ಅವರನ್ನು ಹಿಡಿಯಲಾಗುವುದು.

52. ಆಗ ಅವರು ಹೇಳುವರು: "ನಾವು ಈ ಕುರ್‌ಆನಿನಲ್ಲಿ ವಿಶ್ವಾಸವಿಟ್ಟಿದ್ದೇವೆ." ಆದರೆ ವಿದೂರ ಸ್ಥಳದಿಂದ (ಆ ವಿಶ್ವಾಸವನ್ನು) ಹಿಡಿದುಕೊಳ್ಳಲು ಅವರಿಗೆ ಹೇಗೆ ತಾನೇ ಸಾಧ್ಯ?[1]

وَقَالُوٓاْ ءَامَنَّا بِهِۦ وَأَنَّىٰ لَهُمُ ٱلتَّنَاوُشُ مِن مَّكَانِۭ بَعِيدٖ ﴿٥٢﴾

53. ಇದಕ್ಕೆ ಮೊದಲು ಅವರು ಅದನ್ನು ನಿಷೇಧಿಸಿದ್ದರು. ಅವರು ಅದನ್ನು ಸರಿಯಾಗಿ ತಿಳಿಯುವ ಗೋಜಿಗೆ ಹೋಗದೆ ವಿದೂರ ಸ್ಥಳದಿಂದಲೇ ಆರೋಪವನ್ನು ಹೊರಿಸುತ್ತಿದ್ದರು.

وَقَدۡ كَفَرُواْ بِهِۦ مِن قَبۡلُۖ وَيَقۡذِفُونَ بِٱلۡغَيۡبِ مِن مَّكَانِۭ بَعِيدٖ ﴿٥٣﴾

54. ಅವರ ಮತ್ತು ಅವರ ಸ್ವೇಚ್ಛೆಗಳ ನಡುವೆ ಪರದೆ ಹಾಕಲಾಗಿದೆ. ಇವರಿಗಿಂತ ಮೊದಲು ಇವರಂತಿರುವ ಜನರಿಗೆ ಹೀಗೆಯೇ ಮಾಡಲಾಗಿತ್ತು. ನಿಶ್ಚಯವಾಗಿಯೂ ಅವರು ಗೊಂದಲಪೂರ್ಣ ಸಂಶಯದಲ್ಲಿದ್ದರು.

وَحِيلَ بَيۡنَهُمۡ وَبَيۡنَ مَا يَشۡتَهُونَ كَمَا فُعِلَ بِأَشۡيَاعِهِم مِّن قَبۡلُۚ إِنَّهُمۡ كَانُواْ فِي شَكّٖ مُّرِيبِۭ ﴿٥٤﴾

# 35. ಫಾತ್ವಿರ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಭೂಮ್ಯಾಕಾಶಗಳನ್ನು ಸೃಷ್ಟಿಸಿದ ಮತ್ತು ದೇವದೂತರುಗಳನ್ನು ಎರಡು, ಮೂರು ಹಾಗೂ ನಾಲ್ಕು ರೆಕ್ಕೆಗಳುಳ್ಳ ದೂತರಾಗಿ ಕಳುಹಿಸಿದ ಅಲ್ಲಾಹನಿಗೆ ಸರ್ವಸ್ತುತಿ. ಅವನು ಸೃಷ್ಟಿಯಲ್ಲಿ ಅವನು ಇಚ್ಛಿಸುವುದನ್ನು ಹೆಚ್ಚಿಸುತ್ತಾನೆ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

ٱلۡحَمۡدُ لِلَّهِ فَاطِرِ ٱلسَّمَٰوَٰتِ وَٱلۡأَرۡضِ جَاعِلِ ٱلۡمَلَٰٓئِكَةِ رُسُلًا أُوْلِيٓ أَجۡنِحَةٖ مَّثۡنَىٰ وَثُلَٰثَ وَرُبَٰعَۚ يَزِيدُ فِي ٱلۡخَلۡقِ مَا يَشَآءُۚ إِنَّ ٱللَّهَ عَلَىٰ كُلِّ شَيۡءٖ قَدِيرٞ ﴿١﴾

2. ಅಲ್ಲಾಹು ಜನರಿಗೆ ಯಾವುದೇ ದಯೆಯನ್ನು ತೆರೆದುಕೊಟ್ಟರೆ ಅದಕ್ಕೆ ತಡೆಯೊಡ್ಡಲು ಯಾರಿಗೂ ಸಾಧ್ಯವಿಲ್ಲ. ಅವನು ಏನಾದರೂ ತಡೆಹಿಡಿದರೆ ಅವನ ನಂತರ ಅದನ್ನು ಬಿಡಿಸಿಕೊಡುವವರು ಯಾರೂ ಇಲ್ಲ. ಅವನು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

مَّا يَفۡتَحِ ٱللَّهُ لِلنَّاسِ مِن رَّحۡمَةٖ فَلَا مُمۡسِكَ لَهَاۖ وَمَا يُمۡسِكۡ فَلَا مُرۡسِلَ لَهُۥ مِنۢ بَعۡدِهِۦۚ وَهُوَ ٱلۡعَزِيزُ ٱلۡحَكِيمُ ﴿٢﴾

3. ಓ ಜನರೇ! ಅಲ್ಲಾಹು ನಿಮಗೆ ದಯಪಾಲಿಸಿದ ಅನುಗ್ರಹವನ್ನು ಸ್ಮರಿಸಿರಿ. ಅಲ್ಲಾಹನನ್ನು ಬಿಟ್ಟು ಆಕಾಶ ಮತ್ತು ಭೂಮಿಯಿಂದ ನಿಮಗೆ ಉಪಜೀವನವನ್ನು ಒದಗಿಸುವ ಬೇರೆ ಸೃಷ್ಟಿಕರ್ತರಿದ್ದಾರೆಯೇ? ಅವನ ಹೊರತು ಆರಾಧನೆಗೆ ಅರ್ಹರಾದ ಬೇರೆ ದೇವರಿಲ್ಲ. ಆದರೂ ನಿಮ್ಮನ್ನು ಹೇಗೆ ತಪ್ಪಿಸಿಬಿಡಲಾಗುತ್ತಿದೆ?

يَـٰٓأَيُّهَا ٱلنَّاسُ ٱذۡكُرُواْ نِعۡمَتَ ٱللَّهِ عَلَيۡكُمۡۚ هَلۡ مِنۡ خَٰلِقٍ غَيۡرُ ٱللَّهِ يَرۡزُقُكُم مِّنَ ٱلسَّمَآءِ وَٱلۡأَرۡضِۚ لَآ إِلَٰهَ إِلَّا هُوَۖ فَأَنَّىٰ تُؤۡفَكُونَ ﴿٣﴾

[1] ಅಂದರೆ ಪರಲೋಕದ ತಲುಪಿದ ನಂತರ ಅವರು ವಿಶ್ವಾಸವಿಡಲು ಹೇಗೆ ಸಾಧ್ಯ? ಇಹಲೋಕದಲ್ಲಿರುವಾಗ ಅವರು ಸತ್ಯನಿಷೇಧಿಗಳಾಗಿದ್ದರು. ಕೈಗೆಟುಕದಷ್ಟು ವಿದೂರದಲ್ಲಿರುವ ಒಂದು ವಸ್ತುವನ್ನು ಹೇಗೆ ಹಿಡಿದುಕೊಳ್ಳಲು ಸಾಧ್ಯವಿಲ್ಲವೋ ಹಾಗೆಯೇ ಪರಲೋಕಕ್ಕೆ ತಲುಪಿದ ನಂತರ ವಿಶ್ವಾಸವಿಟ್ಟು ಏನೂ ಪ್ರಯೋಜನವಿಲ್ಲ.

4. ಅವರು ನಿಮ್ಮನ್ನು ನಿಷೇಧಿಸಿದರೆ—ನಿಮಗಿಂತ ಮೊದಲೂ ಅನೇಕ ಸಂದೇಶವಾಹಕರುಗಳು ನಿಷೇಧಕ್ಕೊಳಗಾಗಿದ್ದಾರೆ. ಎಲ್ಲಾ ವಿಷಯಗಳನ್ನೂ ಅಲ್ಲಾಹನ ಕಡೆಗೇ ಮರಳಿಸಲಾಗುತ್ತದೆ.

وَإِن يُكَذِّبُوكَ فَقَدْ كُذِّبَتْ رُسُلٌ مِّن قَبْلِكَ ۚ وَإِلَى ٱللَّهِ تُرْجَعُ ٱلْأُمُورُ ﴿٤﴾

5. ಓ ಮನುಷ್ಯರೇ! ನಿಶ್ಚಯವಾಗಿಯೂ ಅಲ್ಲಾಹನ ವಾಗ್ದಾನವು ಸತ್ಯವಾಗಿದೆ. ಆದ್ದರಿಂದ ಇಹಲೋಕ ಜೀವನವು ನಿಮ್ಮನ್ನು ಮರುಳುಗೊಳಿಸದಿರಲಿ. ನಯವಂಚಕನಾದ ಶೈತಾನನು ಅಲ್ಲಾಹನ ವಿಷಯದಲ್ಲಿ ನಿಮ್ಮನ್ನು ಮರುಳುಗೊಳಿಸದಿರಲಿ.

يَـٰٓأَيُّهَا ٱلنَّاسُ إِنَّ وَعْدَ ٱللَّهِ حَقٌّ ۖ فَلَا تَغُرَّنَّكُمُ ٱلْحَيَوٰةُ ٱلدُّنْيَا وَلَا يَغُرَّنَّكُم بِٱللَّهِ ٱلْغَرُورُ ﴿٥﴾

6. ನಿಶ್ಚಯವಾಗಿಯೂ ಶೈತಾನನು ನಿಮ್ಮ ವೈರಿಯಾಗಿದ್ದಾನೆ. ಆದ್ದರಿಂದ ಅವನನ್ನು ವೈರಿಯಾಗಿಯೇ ಸ್ವೀಕರಿಸಿರಿ. ಅವನು ತನ್ನ ಪಕ್ಷವನ್ನು ಕರೆಯುತ್ತಿರುವುದು ಅವರು ನರಕವಾಸಿಗಳಲ್ಲಿ ಸೇರಲೆಂದು ಮಾತ್ರವಾಗಿದೆ.

إِنَّ ٱلشَّيْطَـٰنَ لَكُمْ عَدُوٌّ فَٱتَّخِذُوهُ عَدُوًّا ۚ إِنَّمَا يَدْعُوا۟ حِزْبَهُۥ لِيَكُونُوا۟ مِنْ أَصْحَـٰبِ ٱلسَّعِيرِ ﴿٦﴾

7. ಸತ್ಯನಿಷೇಧಿಗಳು ಯಾರೋ—ಅವರಿಗೆ ಕಠೋರ ಶಿಕ್ಷೆಯಿದೆ. ಸತ್ಯ-ವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ ಅವರಿಗೆ ಕ್ಷಮೆ ಮತ್ತು ಮಹಾ ಪ್ರತಿಫಲವಿದೆ.

ٱلَّذِينَ كَفَرُوا۟ لَهُمْ عَذَابٌ شَدِيدٌ ۖ وَٱلَّذِينَ ءَامَنُوا۟ وَعَمِلُوا۟ ٱلصَّـٰلِحَـٰتِ لَهُم مَّغْفِرَةٌ وَأَجْرٌ كَبِيرٌ ﴿٧﴾

8. ಯಾರಿಗೆ ಅವನ ದುಷ್ಕರ್ಮಗಳನ್ನು ಅಂದಗೊಳಿಸಿ ಕೊಡಲಾಗಿ, ಅವನು ಅದನ್ನು ಸತ್ಕರ್ಮಗಳೆಂದು ಭಾವಿಸುತ್ತಾನೋ (ಅವನ ಸ್ಥಿತಿಯು ಸನ್ಮಾರ್ಗದಲ್ಲಿರುವ ವ್ಯಕ್ತಿಯಂತಾಗಲು ಸಾಧ್ಯವೇ)? ಅಲ್ಲಾಹು ಅವನು ಇಚ್ಛಿಸುವವರನ್ನು ದಾರಿ ತಪ್ಪಿಸುತ್ತಾನೆ ಮತ್ತು ಅವನು ಇಚ್ಛಿಸುವವರಿಗೆ ಸನ್ಮಾರ್ಗ ತೋರಿಸುತ್ತಾನೆ. ಆದ್ದರಿಂದ ಅವರ ಬಗ್ಗೆ ಬೇಸರಪಟ್ಟು ನೀವು ನಿಮ್ಮನ್ನೇ ನಾಶ ಮಾಡಬೇಡಿ. ನಿಶ್ಚಯವಾಗಿಯೂ ಅವರು ಮಾಡುವ ಕರ್ಮಗಳ ಕುರಿತು ಅಲ್ಲಾಹು ಬಹಳ ಚೆನ್ನಾಗಿ ತಿಳಿದಿದ್ದಾನೆ.

أَفَمَن زُيِّنَ لَهُۥ سُوٓءُ عَمَلِهِۦ فَرَءَاهُ حَسَنًا ۖ فَإِنَّ ٱللَّهَ يُضِلُّ مَن يَشَآءُ وَيَهْدِى مَن يَشَآءُ ۖ فَلَا تَذْهَبْ نَفْسُكَ عَلَيْهِمْ حَسَرَٰتٍ ۚ إِنَّ ٱللَّهَ عَلِيمٌۢ بِمَا يَصْنَعُونَ ﴿٨﴾

9. ಅಲ್ಲಾಹನೇ ಮಾರುತಗಳನ್ನು ಕಳುಹಿಸುತ್ತಾನೆ. ಅವು ಮೋಡಗಳನ್ನು ಎತ್ತಿಕೊಳ್ಳುತ್ತವೆ. ನಂತರ ನಾವು ಅದನ್ನು ಬರಡು ಭೂಮಿಗೆ ಸಾಗಿಸಿ, ನಂತರ ಅದರ ಮೂಲಕ ಬರಡು ಭೂಮಿಗೆ ಜೀವ ನೀಡುತ್ತೇವೆ. ಹೀಗೆಯೇ ಪುನರುತ್ಥಾನವು ಕೂಡ ನಡೆಯುತ್ತದೆ.

وَٱللَّهُ ٱلَّذِىٓ أَرْسَلَ ٱلرِّيَـٰحَ فَتُثِيرُ سَحَابًا فَسُقْنَـٰهُ إِلَىٰ بَلَدٍ مَّيِّتٍ فَأَحْيَيْنَا بِهِ ٱلْأَرْضَ بَعْدَ مَوْتِهَا ۚ كَذَٰلِكَ ٱلنُّشُورُ ﴿٩﴾

10. ಯಾರಾದರೂ ಪ್ರತಿಷ್ಠೆಯನ್ನು ಬಯಸುವುದಾದರೆ ಪ್ರತಿಷ್ಠೆಗಳೆ-ಲ್ಲವೂ ಅಲ್ಲಾಹನಿಗೆ ಸೇರಿದ್ದಾಗಿವೆ. ಒಳ್ಳೆಯ ವಚನಗಳು ಅವನ ಬಳಿಗೆ ಏರಿ ಹೋಗುತ್ತವೆ. ಸತ್ಕರ್ಮಗಳು ಅವುಗಳನ್ನು ಮೇಲಕ್ಕೇ-ರಿಸುತ್ತವೆ. ಯಾರು ಕೆಟ್ಟ ಸಂಚುಗಳನ್ನು ರೂಪಿಸುತ್ತಾರೋ ಅವರಿಗೆ ಕಠೋರ ಶಿಕ್ಷೆಯಿದೆ. ಅವರ ಸಂಚುಗಳೆಲ್ಲವೂ ಸರ್ವನಾಶವಾಗುವುವು.

مَن كَانَ يُرِيدُ ٱلْعِزَّةَ فَلِلَّهِ ٱلْعِزَّةُ جَمِيعًا ۚ إِلَيْهِ يَصْعَدُ ٱلْكَلِمُ ٱلطَّيِّبُ وَٱلْعَمَلُ ٱلصَّـٰلِحُ يَرْفَعُهُۥ ۚ وَٱلَّذِينَ يَمْكُرُونَ ٱلسَّيِّـَٔاتِ لَهُمْ عَذَابٌ شَدِيدٌ ۖ وَمَكْرُ أُو۟لَـٰٓئِكَ هُوَ يَبُورُ ﴿١٠﴾

11. ಅಲ್ಲಾಹು ನಿಮ್ಮನ್ನು ಮಣ್ಣಿನಿಂದ, ನಂತರ ವೀರ್ಯದಿಂದ ಸೃಷ್ಟಿಸಿದನು. ನಂತರ ಅವನು ನಿಮ್ಮನ್ನು ಜೋಡಿಗಳನ್ನಾಗಿ (ಗಂಡು-ಹೆಣ್ಣು) ಮಾಡಿದನು. ಯಾವುದೇ ಹೆಣ್ಣು ಗರ್ಭ ಧರಿಸುವಾಗಲೂ ಜನ್ಮ ನೀಡುವಾಗಲೂ ಅವನಿಗೆ ತಿಳಿಯದೇ ಇರುವುದಿಲ್ಲ. ದೀರ್ಘಾಯುಷ್ಯವಿರುವ ವ್ಯಕ್ತಿಗೆ ಆಯುಷ್ಯ ನೀಡುವುದು ಮತ್ತು ಯಾರದ್ದಾದರೂ ಆಯುಷ್ಯ ಕುಗ್ಗಿಸುವುದು ಒಂದು ಗ್ರಂಥದಲ್ಲಿರುವಂತೆಯೇ ನಡೆಯುತ್ತವೆ. ನಿಶ್ಚಯವಾಗಿಯೂ ಅದು ಅಲ್ಲಾಹನಿಗೆ ಬಹಳ ಸುಲಭವಾಗಿದೆ.

وَٱللَّهُ خَلَقَكُم مِّن تُرَابٍ ثُمَّ مِن نُّطْفَةٍ ثُمَّ جَعَلَكُمْ أَزْوَٰجًا ۚ وَمَا تَحْمِلُ مِنْ أُنثَىٰ وَلَا تَضَعُ إِلَّا بِعِلْمِهِۦ ۚ وَمَا يُعَمَّرُ مِن مُّعَمَّرٍ وَلَا يُنقَصُ مِنْ عُمُرِهِۦٓ إِلَّا فِى كِتَٰبٍ ۚ إِنَّ ذَٰلِكَ عَلَى ٱللَّهِ يَسِيرٌ ﴿١١﴾

12. ಎರಡು ಸಮುದ್ರಗಳು ಸಮಾನವಲ್ಲ. ಇದರಲ್ಲಿರುವ ನೀರು ತಾಜಾ ಮತ್ತು ರುಚಿಯಾಗಿದ್ದು ಕುಡಿಯಲು ಆಹ್ಲಾದಕರವಾಗಿದೆ. ಅದು ಕಹಿ ಉಪ್ಪು ನೀರನ್ನು ಹೊಂದಿದೆ. ಆದರೆ, ಈ ಎರಡು ನೀರಿನಿಂದಲೂ ನೀವು ತಾಜಾ ಮಾಂಸವನ್ನು (ಮೀನುಗಳನ್ನು) ತಿನ್ನುತ್ತೀರಿ ಮತ್ತು ನೀವು ಧರಿಸುವ ಆಭರಣಗಳನ್ನು (ಮುತ್ತು-ಹವಳ) ಹೊರತೆಗೆಯುತ್ತೀರಿ. ನಾವೆಗಳು ಅದರ ನೀರನ್ನು ಸೀಳುತ್ತಾ ಸಾಗುವುದನ್ನು ನೀವು ನೋಡುತ್ತೀರಿ. ಇವೆಲ್ಲವೂ ನೀವು ಅಲ್ಲಾಹನ ಔದಾರ್ಯದಿಂದ ಉಪಜೀವನವನ್ನು ಹುಡುಕಲೆಂದು ಮತ್ತು ಅವನಿಗೆ ಕೃತಜ್ಞರಾಗಲೆಂದಾಗಿದೆ.

وَمَا يَسْتَوِى ٱلْبَحْرَانِ هَٰذَا عَذْبٌ فُرَاتٌ سَآئِغٌ شَرَابُهُۥ وَهَٰذَا مِلْحٌ أُجَاجٌ ۖ وَمِن كُلٍّ تَأْكُلُونَ لَحْمًا طَرِيًّا وَتَسْتَخْرِجُونَ حِلْيَةً تَلْبَسُونَهَا ۖ وَتَرَى ٱلْفُلْكَ فِيهِ مَوَاخِرَ لِتَبْتَغُوا۟ مِن فَضْلِهِۦ وَلَعَلَّكُمْ تَشْكُرُونَ ﴿١٢﴾

13. ಅವನು ರಾತ್ರಿಯನ್ನು ಹಗಲಿನಲ್ಲಿ ತೂರಿಸುತ್ತಾನೆ ಮತ್ತು ಹಗಲನ್ನು ರಾತ್ರಿಯಲ್ಲಿ ತೂರಿಸುತ್ತಾನೆ. ಅವನು ಸೂರ್ಯ-ಚಂದ್ರರನ್ನು ವಿಧೇ-ಯಗೊಳಿಸಿದ್ದಾನೆ. ಎಲ್ಲವೂ ಒಂದು ನಿಗದಿತ ಅವಧಿಯವರೆಗೆ ಚಲಿಸುತ್ತವೆ. ಅವನೇ ನಿಮ್ಮ ಪರಿಪಾಲಕನಾದ ಅಲ್ಲಾಹು. ಸಾರ್ವಭೌಮತ್ವವು ಅವನಿಗೆ ಸೇರಿದ್ದು. ನೀವು ಅವನನ್ನು ಬಿಟ್ಟು ಯಾರನ್ನು ಕರೆದು ಪ್ರಾರ್ಥಿಸುತ್ತಿದ್ದೀರೋ ಅವರ ಸ್ವಾಧೀನದಲ್ಲಿ ಖರ್ಜೂರದ ಬೀಜದ ಪೊರೆಯೂ ಇಲ್ಲ.

يُولِجُ ٱلَّيْلَ فِى ٱلنَّهَارِ وَيُولِجُ ٱلنَّهَارَ فِى ٱلَّيْلِ وَسَخَّرَ ٱلشَّمْسَ وَٱلْقَمَرَ ۖ كُلٌّ يَجْرِى لِأَجَلٍ مُّسَمًّى ۚ ذَٰلِكُمُ ٱللَّهُ رَبُّكُمْ لَهُ ٱلْمُلْكُ ۚ وَٱلَّذِينَ تَدْعُونَ مِن دُونِهِۦ مَا يَمْلِكُونَ مِن قِطْمِيرٍ ﴿١٣﴾

14. ನೀವು ಅವರನ್ನು ಕರೆದು ಪ್ರಾರ್ಥಿಸಿದರೆ ಅವರು ನಿಮ್ಮ ಪ್ರಾರ್ಥನೆಯನ್ನು ಕೇಳುವುದಿಲ್ಲ. ಅವರು ಅದನ್ನು ಕೇಳಿದರೂ ಉತ್ತರ ನೀಡುವುದಿಲ್ಲ. ಪುನರುತ್ಥಾನದ ದಿನದಂದು ಅವರು ನಿಮ್ಮ ಸಹಭಾಗಿತ್ವ (ಶಿರ್ಕ್) ವನ್ನು ನಿಷೇಧಿಸುವರು. ಸೂಕ್ಷ್ಮಜ್ಞಾ-ನಿಯಾದ ಅಲ್ಲಾಹನಂತೆ ನಿಮಗೆ ತಿಳಿಸಿಕೊಡುವವರು ಯಾರೂ ಇಲ್ಲ.

إِن تَدْعُوهُمْ لَا يَسْمَعُوا۟ دُعَآءَكُمْ وَلَوْ سَمِعُوا۟ مَا ٱسْتَجَابُوا۟ لَكُمْ ۖ وَيَوْمَ ٱلْقِيَٰمَةِ يَكْفُرُونَ بِشِرْكِكُمْ ۚ وَلَا يُنَبِّئُكَ مِثْلُ خَبِيرٍ ﴿١٤﴾

15. ಓ ಮನುಷ್ಯರೇ! ನೀವು ಅಲ್ಲಾಹನ ಮೇಲೆ ಅವಲಂಬಿತರಾಗಿ-ದ್ದೀರಿ. ಅಲ್ಲಾಹು ನಿರಪೇಕ್ಷನು ಮತ್ತು ಸ್ತುತ್ಯರ್ಹನಾಗಿದ್ದಾನೆ.

۞ يَٰٓأَيُّهَا ٱلنَّاسُ أَنتُمُ ٱلْفُقَرَآءُ إِلَى ٱللَّهِ ۖ وَٱللَّهُ هُوَ ٱلْغَنِىُّ ٱلْحَمِيدُ ﴿١٥﴾

16. ಅವನು ಇಚ್ಛಿಸಿದರೆ ನಿಮ್ಮನ್ನು ನಾಶ ಮಾಡಿ ಹೊಸದೊಂದು ಸೃಷ್ಟಿಯನ್ನು ತರುವನು.

إِن يَشَأۡ يُذۡهِبۡكُمۡ وَيَأۡتِ بِخَلۡقٖ جَدِيدٖ ﴿١٦﴾

17. ಅದು ಅಲ್ಲಾಹನ ಮಟ್ಟಿಗೆ ಕಷ್ಟವೇನೂ ಅಲ್ಲ.

وَمَا ذَٰلِكَ عَلَى ٱللَّهِ بِعَزِيزٖ ﴿١٧﴾

18. ಪಾಪಗಳ ಭಾರವನ್ನು ಹೊರುವವರು ಇತರರು ಮಾಡಿದ ಪಾಪಗಳ ಭಾರವನ್ನು ಹೊರುವುದಿಲ್ಲ. ಪಾಪಭಾರವನ್ನು ಹೊತ್ತು ಕಷ್ಟಪಡುವವನು ತನ್ನ ಭಾರವನ್ನು ಹೊರಲು ಯಾರನ್ನಾದರೂ ಕರೆದರೆ, ಅವನು ಅದರಿಂದ ಏನನ್ನೂ ಹೊರುವುದಿಲ್ಲ. ಅವನು ಹತ್ತಿರದ ಸಂಬಂಧಿಯಾಗಿದ್ದರೂ ಸಹ. ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಅದೃಶ್ಯ ಸ್ಥಿತಿಯಲ್ಲಿ ಭಯಪಡುವವರಿಗೆ ಮತ್ತು ನಮಾಝ್ ಸಂಸ್ಥಾಪಿಸುವವರಿಗೆ ಮಾತ್ರ ನೀವು ನೀಡುವ ಎಚ್ಚರಿಕೆ ಪ್ರಯೋಜನಕಾರಿಯಾಗುತ್ತದೆ. ಯಾರು ಪರಿಶುದ್ಧನಾಗುತ್ತಾನೋ ಅವನು ಪರಿಶುದ್ಧನಾಗುವುದು ಅವನ ಒಳಿತಿಗೇ ಆಗಿದೆ. ಎಲ್ಲರೂ ಅಲ್ಲಾಹನ ಬಳಿಗೇ ಮರಳಿ ಹೋಗಬೇಕಾಗಿದೆ.

وَلَا تَزِرُ وَازِرَةٞ وِزۡرَ أُخۡرَىٰۚ وَإِن تَدۡعُ مُثۡقَلَةٌ إِلَىٰ حِمۡلِهَا لَا يُحۡمَلۡ مِنۡهُ شَيۡءٞ وَلَوۡ كَانَ ذَا قُرۡبَىٰٓۗ إِنَّمَا تُنذِرُ ٱلَّذِينَ يَخۡشَوۡنَ رَبَّهُم بِٱلۡغَيۡبِ وَأَقَامُواْ ٱلصَّلَوٰةَۚ وَمَن تَزَكَّىٰ فَإِنَّمَا يَتَزَكَّىٰ لِنَفۡسِهِۦۚ وَإِلَى ٱللَّهِ ٱلۡمَصِيرُ ﴿١٨﴾

19. ಕಣ್ಣು ಕಾಣದವನು ಮತ್ತು ಕಣ್ಣು ಕಾಣುವವನು ಸಮಾನರಲ್ಲ.

وَمَا يَسۡتَوِي ٱلۡأَعۡمَىٰ وَٱلۡبَصِيرُ ﴿١٩﴾

20. ಅಂಧಕಾರಗಳು ಮತ್ತು ಬೆಳಕು ಸಮಾನವಲ್ಲ.

وَلَا ٱلظُّلُمَٰتُ وَلَا ٱلنُّورُ ﴿٢٠﴾

21. ನೆರಳು ಮತ್ತು ಬಿಸಿಲು ಸಮಾನವಲ್ಲ.

وَلَا ٱلظِّلُّ وَلَا ٱلۡحَرُورُ ﴿٢١﴾

22. ಬದುಕಿರುವವರು ಮತ್ತು ಸತ್ತವರು ಸಮಾನರಲ್ಲ. ಅಲ್ಲಾಹು ಅವನು ಇಚ್ಛಿಸುವವರಿಗೆ ಖಂಡಿತ ಕೇಳುವಂತೆ ಮಾಡುತ್ತಾನೆ. ಸಮಾಧಿಗಳಲ್ಲಿರುವವರಿಗೆ ಕೇಳುವಂತೆ ಮಾಡಲು ನಿಮಗೆ ಸಾಧ್ಯವಿಲ್ಲ.

وَمَا يَسۡتَوِي ٱلۡأَحۡيَآءُ وَلَا ٱلۡأَمۡوَٰتُۚ إِنَّ ٱللَّهَ يُسۡمِعُ مَن يَشَآءُۖ وَمَآ أَنتَ بِمُسۡمِعٖ مَّن فِي ٱلۡقُبُورِ ﴿٢٢﴾

23. ನೀವು ಕೇವಲ ಮುನ್ನೆಚ್ಚರಿಕೆ ನೀಡುವವರಾಗಿದ್ದೀರಿ.

إِنۡ أَنتَ إِلَّا نَذِيرٌ ﴿٢٣﴾

24. ನಿಶ್ಚಯವಾಗಿಯೂ ನಾವು ನಿಮ್ಮನ್ನು ಸುವಾರ್ತೆ ತಿಳಿಸುವವರಾಗಿ ಮತ್ತು ಮುನ್ನೆಚ್ಚರಿಕೆ ನೀಡುವವರಾಗಿ ಸತ್ಯದೊಂದಿಗೆ ಕಳುಹಿಸಿದ್ದೇವೆ. ಒಬ್ಬ ಮುನ್ನೆಚ್ಚರಿಕೆಗಾರ ಬರದ ಯಾವುದೇ ಸಮುದಾಯವೂ ಕಳೆದು ಹೋಗಿಲ್ಲ.

إِنَّآ أَرۡسَلۡنَٰكَ بِٱلۡحَقِّ بَشِيرٗا وَنَذِيرٗاۚ وَإِن مِّنۡ أُمَّةٍ إِلَّا خَلَا فِيهَا نَذِيرٞ ﴿٢٤﴾

25. ಅವರು ನಿಮ್ಮನ್ನು ನಿಷೇಧಿಸಿದರೆ—ಅವರಿಗಿಂತ ಮೊದಲಿನ ಜನರೂ (ಅವರ ಪ್ರವಾದಿಗಳನ್ನು) ನಿಷೇಧಿಸಿದ್ದಾರೆ. ಅವರ ಸಂದೇಶವಾಹಕ-ರುಗಳು ಅವರ ಬಳಿಗೆ ಪವಾಡಗಳು, ಸಾಕ್ಷ್ಯಾಧಾರಗಳು ಮತ್ತು ಬೆಳಕು ಬೀರುವ ಗ್ರಂಥಗಳೊಂದಿಗೆ ಬಂದಿದ್ದರು.

وَإِن يُكَذِّبُوكَ فَقَدۡ كَذَّبَ ٱلَّذِينَ مِن قَبۡلِهِمۡ جَآءَتۡهُمۡ رُسُلُهُم بِٱلۡبَيِّنَٰتِ وَبِٱلزُّبُرِ وَبِٱلۡكِتَٰبِ ٱلۡمُنِيرِ ﴿٢٥﴾

26. ನಂತರ ನಾನು ಸತ್ಯನಿಷೇಧಿಗಳನ್ನು ಹಿಡಿದೆನು. ಆಗ ನನ್ನ ಶಿಕ್ಷೆಯು ಹೇಗಿತ್ತು!

ثُمَّ أَخَذۡتُ ٱلَّذِينَ كَفَرُواْۖ فَكَيۡفَ كَانَ نَكِيرِ ﴿٢٦﴾

27. ಅಲ್ಲಾಹು ಆಕಾಶದಿಂದ ಮಳೆ ಸುರಿಸುವುದನ್ನು ನೀವು ನೋಡಿಲ್ಲವೇ? ನಂತರ ನಾವು ಅದರಿಂದ ವಿಭಿನ್ನ ಬಣ್ಣಗಳಿರುವ ಹಣ್ಣುಗಳನ್ನು ಉತ್ಪಾದಿಸಿದೆವು. ಪರ್ವತಗಳಲ್ಲಿ ಬಿಳಿ ಮತ್ತು ಕೆಂಪು ವರ್ಣವೈವಿಧ್ಯತೆಗಳಿರುವ ರಸ್ತೆಗಳಿವೆ. ಕೆಲವು ಕಡುಗಪ್ಪು ಬಣ್ಣವನ್ನು ಹೊಂದಿವೆ.

أَلَمْ تَرَ أَنَّ ٱللَّهَ أَنزَلَ مِنَ ٱلسَّمَآءِ مَآءً فَأَخْرَجْنَا بِهِۦ ثَمَرَٰتٍ مُّخْتَلِفًا أَلْوَٰنُهَا ۚ وَمِنَ ٱلْجِبَالِ جُدَدٌۢ بِيضٌ وَحُمْرٌ مُّخْتَلِفٌ أَلْوَٰنُهَا وَغَرَابِيبُ سُودٌ ﴿٢٧﴾

28. ಅದೇ ರೀತಿ ಮನುಷ್ಯರು, ಜೀವರಾಶಿಗಳು ಮತ್ತು ಜಾನುವಾರುಗಳಲ್ಲೂ ವಿಭಿನ್ನ ಬಣ್ಣಗಳಿವೆ. ಅಲ್ಲಾಹನ ದಾಸರಲ್ಲಿ ಜ್ಞಾನವಂತರು ಮಾತ್ರ ಅವನನ್ನು ಭಯಪಡುತ್ತಾರೆ. ನಿಶ್ಚಯವಾಗಿಯೂ ಅಲ್ಲಾಹು ಪ್ರಬಲನು ಮತ್ತು ಕ್ಷಮಿಸುವವನಾಗಿದ್ದಾನೆ.

وَمِنَ ٱلنَّاسِ وَٱلدَّوَآبِّ وَٱلْأَنْعَٰمِ مُخْتَلِفٌ أَلْوَٰنُهُۥ كَذَٰلِكَ ۗ إِنَّمَا يَخْشَى ٱللَّهَ مِنْ عِبَادِهِ ٱلْعُلَمَٰٓؤُا۟ ۗ إِنَّ ٱللَّهَ عَزِيزٌ غَفُورٌ ﴿٢٨﴾

29. ನಿಶ್ಚಯವಾಗಿಯೂ ಅಲ್ಲಾಹನ ಗ್ರಂಥವನ್ನು ಪಠಿಸುವವರು, ನಮಾಝ್ ಸಂಸ್ಥಾಪಿಸುವವರು ಮತ್ತು ನಾವು ನೀಡಿದ ಸಂಪತ್ತಿನಿಂದ ರಹಸ್ಯವಾಗಿ ಮತ್ತು ಬಹಿರಂಗವಾಗಿ ಖರ್ಚು ಮಾಡುವವರು ಯಾರೋ—ಅವರು ಎಂದಿಗೂ ನಷ್ಟವಾಗದ ವ್ಯಾಪಾರವನ್ನು ಬಯಸುತ್ತಾರೆ.

إِنَّ ٱلَّذِينَ يَتْلُونَ كِتَٰبَ ٱللَّهِ وَأَقَامُوا۟ ٱلصَّلَوٰةَ وَأَنفَقُوا۟ مِمَّا رَزَقْنَٰهُمْ سِرًّا وَعَلَانِيَةً يَرْجُونَ تِجَٰرَةً لَّن تَبُورَ ﴿٢٩﴾

30. ಅವನು ಅವರಿಗೆ ಅವರ ಪೂರ್ಣ ಪ್ರತಿಫಲವನ್ನು ನೀಡಲೆಂದು ಮತ್ತು ಅವನ ಔದಾರ್ಯದಿಂದ ಅದಕ್ಕಿಂತಲೂ ಹೆಚ್ಚು ನೀಡಲೆಂದು. ನಿಶ್ಚಯವಾಗಿಯೂ ಅವನು ಕ್ಷಮಿಸುವವನು ಮತ್ತು ಕೃತಜ್ಞನಾಗಿದ್ದಾನೆ.

لِيُوَفِّيَهُمْ أُجُورَهُمْ وَيَزِيدَهُم مِّن فَضْلِهِۦٓ ۚ إِنَّهُۥ غَفُورٌ شَكُورٌ ﴿٣٠﴾

31. ನಾವು ನಿಮಗೆ ದೇವವಾಣಿಯ ಮೂಲಕ ನೀಡಿದ ಈ ಗ್ರಂಥವು ಸಂಪೂರ್ಣ ಸತ್ಯವಾಗಿದೆ. ಅದು ಅದಕ್ಕಿಂತ ಮೊದಲಿನ ಗ್ರಂಥಗಳನ್ನು ದೃಢೀಕರಿಸುತ್ತದೆ. ನಿಶ್ಚಯವಾಗಿಯೂ ಅಲ್ಲಾಹು ತನ್ನ ದಾಸರ ಬಗ್ಗೆ ಸೂಕ್ಷ್ಮವಾಗಿ ತಿಳಿಯುವವನು ಮತ್ತು ನೋಡುವವನಾಗಿದ್ದಾನೆ.

وَٱلَّذِىٓ أَوْحَيْنَآ إِلَيْكَ مِنَ ٱلْكِتَٰبِ هُوَ ٱلْحَقُّ مُصَدِّقًا لِّمَا بَيْنَ يَدَيْهِ ۗ إِنَّ ٱللَّهَ بِعِبَادِهِۦ لَخَبِيرٌۢ بَصِيرٌ ﴿٣١﴾

32. ನಂತರ ನಮ್ಮ ದಾಸರಲ್ಲಿ ನಾವು ಆರಿಸಿದವರಿಗೆ ನಾವು ಗ್ರಂಥವನ್ನು ಉತ್ತರಾಧಿಕಾರವಾಗಿ ನೀಡಿದೆವು. ಅವರಲ್ಲಿ ಸ್ವಯಂ ಅಕ್ರಮವೆಸಗಿದವರು, ಮಧ್ಯಮ ನಿಲುವನ್ನು ಹೊಂದಿದವರು ಮತ್ತು ಅಲ್ಲಾಹನ ಅಪ್ಪಣೆಯಂತೆ ಸತ್ಕರ್ಮವೆಸಗುವುದರಲ್ಲಿ ಮುಂಚೂಣಿಯಲ್ಲಿರುವವರು ಇದ್ದಾರೆ. ಅದೇ ಅತಿದೊಡ್ಡ ಔದಾರ್ಯ.

ثُمَّ أَوْرَثْنَا ٱلْكِتَٰبَ ٱلَّذِينَ ٱصْطَفَيْنَا مِنْ عِبَادِنَا ۖ فَمِنْهُمْ ظَالِمٌ لِّنَفْسِهِۦ وَمِنْهُم مُّقْتَصِدٌ وَمِنْهُمْ سَابِقٌۢ بِٱلْخَيْرَٰتِ بِإِذْنِ ٱللَّهِ ۚ ذَٰلِكَ هُوَ ٱلْفَضْلُ ٱلْكَبِيرُ ﴿٣٢﴾

33. ಅವರು ಶಾಶ್ವತ ವಾಸದ ಸ್ವರ್ಗೋದ್ಯಾನಗಳನ್ನು ಪ್ರವೇಶಿಸುವರು. ಅಲ್ಲಿ ಅವರಿಗೆ ಬಂಗಾರ ಮತ್ತು ಮುತ್ತಿನ

جَنَّٰتُ عَدْنٍ يَدْخُلُونَهَا يُحَلَّوْنَ فِيهَا مِنْ أَسَاوِرَ مِن ذَهَبٍ وَلُؤْلُؤًا ۖ وَلِبَاسُهُمْ

ಕಡಗಗಳನ್ನು ತೊಡಿಸಲಾಗುವುದು. ಅಲ್ಲಿ ಅವರ ಪೋಷಾಕು ರೇಷ್ಮೆಯಾಗಿರುವುದು.

فِيهَا حَرِيرٞ ٣٣

---

34. ಅವರು ಹೇಳುವರು: "ನಮ್ಮಿಂದ ವ್ಯಥೆಯನ್ನು ನಿವಾರಿಸಿದ ಅಲ್ಲಾಹನಿಗೆ ಸರ್ವಸ್ತುತಿ. ನಿಶ್ಚಯವಾಗಿಯೂ ನಮ್ಮ ಪರಿಪಾಲಕನು (ಅಲ್ಲಾಹು) ಕ್ಷಮಿಸುವವನು ಮತ್ತು ಕೃತಜ್ಞನಾಗಿದ್ದಾನೆ.

وَقَالُواْ ٱلۡحَمۡدُ لِلَّهِ ٱلَّذِيٓ أَذۡهَبَ عَنَّا ٱلۡحَزَنَۖ إِنَّ
رَبَّنَا لَغَفُورٞ شَكُورٌ ٣٤

---

35. ಅವನು ತನ್ನ ಔದಾರ್ಯದಿಂದ ನಮಗೆ ಶಾಶ್ವತ ವಾಸದ ಸ್ಥಳದಲ್ಲಿ (ಸ್ವರ್ಗದಲ್ಲಿ) ವಾಸ್ತವ್ಯಗೊಳಿಸಿದ್ದಾನೆ. ಇಲ್ಲಿ ನಮಗೆ ಯಾವುದೇ ತೊಂದರೆ ಉಂಟಾಗುವುದಿಲ್ಲ. ಇಲ್ಲಿ ನಮಗೆ ಯಾವುದೇ ಸುಸ್ತು ಕೂಡ ಉಂಟಾಗುವುದಿಲ್ಲ."

ٱلَّذِيٓ أَحَلَّنَا دَارَ ٱلۡمُقَامَةِ مِن فَضۡلِهِۦ لَا
يَمَسُّنَا فِيهَا نَصَبٞ وَلَا يَمَسُّنَا فِيهَا لُغُوبٞ ٣٥

---

36. ಸತ್ಯನಿಷೇಧಿಗಳು ಯಾರೋ—ಅವರಿಗೆ ನರಕಾಗ್ನಿಯಿದೆ. ಅವರಿಗೆ ಸಾವನ್ನು ವಿಧಿಸಲಾಗುವುದಿಲ್ಲ. ಹಾಗಿದ್ದರೆ ಅವರಿಗೆ ಸಾಯಬಹುದಾಗಿತ್ತು. ನರಕದ ಶಿಕ್ಷೆಯಲ್ಲಿ ಅವರಿಗೆ ಯಾವುದೇ ರಿಯಾಯಿತಿ ನೀಡಲಾಗುವುದಿಲ್ಲ. ನಾವು ಎಲ್ಲಾ ಕೃತಘ್ನರಿಗೂ ಈ ರೀತಿ ಪತಿಫಲ ನೀಡುತ್ತೇವೆ.

وَٱلَّذِينَ كَفَرُواْ لَهُمۡ نَارُ جَهَنَّمَ لَا يُقۡضَىٰ
عَلَيۡهِمۡ فَيَمُوتُواْ وَلَا يُخَفَّفُ عَنۡهُم مِّنۡ عَذَابِهَاۚ
كَذَٰلِكَ نَجۡزِي كُلَّ كَفُورٖ ٣٦

---

37. ಅಲ್ಲಿ ಅವರು ಕಿರಿಚುತ್ತಾ ಹೇಳುವರು: "ನಮ್ಮ ಪರಿಪಾಲಕನೇ! ನಮ್ಮನ್ನು ಇಲ್ಲಿಂದ ಹೊರಗೆ ಬಿಡು. ನಾವು ಸತ್ಕರ್ಮಗ-ಳನ್ನು ಮಾಡುತ್ತೇವೆ. ನಾವು ಮಾಡುತ್ತಿದ್ದ ಕರ್ಮಗಳಲ್ಲದ ಬೇರೆ ಕರ್ಮಗಳನ್ನು ಮಾಡುತ್ತೇವೆ." (ಅಲ್ಲಾಹು ಹೇಳುವನು): "ಉಪದೇಶವನ್ನು ಸ್ವೀಕರಿಸಲು ಬಯಸುವವರಿಗೆ ಉಪದೇಶವನ್ನು ಸ್ವೀಕರಿಸಲು ಸಾಕಾಗುವಷ್ಟು ಆಯುಷ್ಯವನ್ನು ನಾವು ನಿಮಗೆ ನೀಡಿರಲಿಲ್ಲವೇ? ಎಚ್ಚರಿಕೆ ನೀಡುವವರು (ಪ್ರವಾದಿಗಳು) ಕೂಡ ನಿಮ್ಮ ಬಳಿಗೆ ಬಂದಿದ್ದರು. ಆದ್ದರಿಂದ ನೀವು ಅದರ ರುಚಿಯನ್ನು ನೋಡಿರಿ. ಅಕ್ರಮಿಗಳಿಗೆ ಸಹಾಯ ಮಾಡಲು ಯಾರೂ ಇರುವುದಿಲ್ಲ."

وَهُمۡ يَصۡطَرِخُونَ فِيهَا رَبَّنَآ أَخۡرِجۡنَا نَعۡمَلۡ
صَٰلِحًا غَيۡرَ ٱلَّذِي كُنَّا نَعۡمَلُۚ أَوَلَمۡ نُعَمِّرۡكُم
مَّا يَتَذَكَّرُ فِيهِ مَن تَذَكَّرَ وَجَآءَكُمُ ٱلنَّذِيرُۖ
فَذُوقُواْ فَمَا لِلظَّٰلِمِينَ مِن نَّصِيرٍ ٣٧

---

38. ನಿಶ್ಚಯವಾಗಿಯೂ ಅಲ್ಲಾಹು ಭೂಮ್ಯಾಕಾಶಗಳ ಅದೃಶ್ಯ ವಿಷಯಗಳನ್ನು ತಿಳಿದವನಾಗಿದ್ದಾನೆ. ನಿಶ್ಚಯವಾಗಿಯೂ ಅವನು ಹೃದಯಗಳಲ್ಲಿರುವುದನ್ನು ತಿಳಿಯುತ್ತಾನೆ.

إِنَّ ٱللَّهَ عَٰلِمُ غَيۡبِ ٱلسَّمَٰوَٰتِ وَٱلۡأَرۡضِۚ إِنَّهُۥ
عَلِيمُۢ بِذَاتِ ٱلصُّدُورِ ٣٨

---

39. ಅವನೇ ನಿಮ್ಮನ್ನು ಭೂಮಿಯಲ್ಲಿ ಪ್ರತಿನಿಧಿಗಳನ್ನಾಗಿ ಮಾಡಿದವನು. ಯಾರು ಸತ್ಯನಿಷೇಧಿಯಾಗುತ್ತಾನೋ ಅವನ ಸತ್ಯನಿಷೇಧದ ಪರಿಣಾಮವನ್ನು ಅವನೇ ಅನುಭವಿಸಬೇಕಾಗುತ್ತದೆ. ಅಲ್ಲಾಹನ

هُوَ ٱلَّذِي جَعَلَكُمۡ خَلَٰٓئِفَ فِي ٱلۡأَرۡضِۚ فَمَن
كَفَرَ فَعَلَيۡهِ كُفۡرُهُۥۖ وَلَا يَزِيدُ ٱلۡكَٰفِرِينَ
كُفۡرُهُمۡ عِندَ رَبِّهِمۡ إِلَّا مَقۡتٗاۖ وَلَا يَزِيدُ

ٱلۡكَٰفِرِينَ كُفۡرُهُمۡ إِلَّا خَسَارٗا ﴿٣٩﴾

ಬಳಿ ಸತ್ಯನಿಷೇಧಿಗಳಿಗೆ ಅವರ ಸತ್ಯನಿಷೇಧವು ದ್ವೇಷವನ್ನಲ್ಲದೆ ಬೇರೇನನ್ನೂ ಹೆಚ್ಚಿಸುವುದಿಲ್ಲ. ಸತ್ಯನಿಷೇಧಿಗಳಿಗೆ ಅವರ ಸತ್ಯನಿಷೇಧವು ನಷ್ಟವನ್ನಲ್ಲದೆ ಬೇರೇನನ್ನೂ ಹೆಚ್ಚಿಸುವುದಿಲ್ಲ.

---

قُلۡ أَرَءَيۡتُمۡ شُرَكَآءَكُمُ ٱلَّذِينَ تَدۡعُونَ مِن دُونِ ٱللَّهِ أَرُونِي مَاذَا خَلَقُواْ مِنَ ٱلۡأَرۡضِ أَمۡ لَهُمۡ شِرۡكٞ فِي ٱلسَّمَٰوَٰتِ أَمۡ ءَاتَيۡنَٰهُمۡ كِتَٰبٗا فَهُمۡ عَلَىٰ بَيِّنَتٖ مِّنۡهُۚ بَلۡ إِن يَعِدُ ٱلظَّٰلِمُونَ بَعۡضُهُم بَعۡضًا إِلَّا غُرُورًا ﴿٤٠﴾

40. ಹೇಳಿರಿ: "ನೀವು ಅಲ್ಲಾಹನನ್ನು ಬಿಟ್ಟು ಕರೆದು ಪ್ರಾರ್ಥಿಸುತ್ತಿರುವ ನಿಮ್ಮ ದೇವರುಗಳ ಬಗ್ಗೆ ಆಲೋಚಿಸಿದ್ದೀರಾ? ಅವರು ಭೂಮಿಯಲ್ಲಿ ಏನು ಸೃಷ್ಟಿಸಿದ್ದಾರೆಂದು ನನಗೆ ತೋರಿಸಿಕೊಡಿ. ಅಥವಾ ಅವರಿಗೆ ಆಕಾಶಗಳಲ್ಲಿ ಏನಾದರೂ ಪಾಲುದಾರಿಕೆಯಿದೆಯೇ? ಅಥವಾ ನಾವು ಅವರಿಗೆ ಒಂದು ಗ್ರಂಥವನ್ನು ನೀಡಿ ಅವರು ಅದರಲ್ಲಿರುವ ಸಾಕ್ಷ್ಯಗಳಂತೆ ನಡೆಯುತ್ತಿರುವರೇ? ಅಲ್ಲ. ವಾಸ್ತವವಾಗಿ, ಈ ಅಕ್ರಮಿಗಳು ಪರಸ್ಪರ ವಂಚನೆಯನ್ನು ಮಾತ್ರ ವಾಗ್ದಾನ ಮಾಡುತ್ತಿದ್ದಾರೆ."

---

إِنَّ ٱللَّهَ يُمۡسِكُ ٱلسَّمَٰوَٰتِ وَٱلۡأَرۡضَ أَن تَزُولَاۚ وَلَئِن زَالَتَآ إِنۡ أَمۡسَكَهُمَا مِنۡ أَحَدٖ مِّنۢ بَعۡدِهِۦٓۚ إِنَّهُۥ كَانَ حَلِيمًا غَفُورٗا ﴿٤١﴾

41. ನಿಶ್ಚಯವಾಗಿಯೂ ಅಲ್ಲಾಹು ಭೂಮ್ಯಾಕಾಶಗಳನ್ನು (ಅವುಗಳ ಸ್ಥಾನದಿಂದ) ತಪ್ಪಿ ಹೋಗದಂತೆ ಹಿಡಿದಿದ್ದಾನೆ. ಅವೇನಾದರೂ ತಪ್ಪಿ ಹೋದರೆ ಅವುಗಳನ್ನು ಹಿಡಿದು ನಿಲ್ಲಿಸಲು ಅವನ ಹೊರತು ಯಾರಿಗೂ ಸಾಧ್ಯವಿಲ್ಲ. ನಿಶ್ಚಯವಾಗಿಯೂ ಅವನು ಸಹಿಷ್ಣುತೆಯುಳ್ಳವನು ಮತ್ತು ಕ್ಷಮಿಸುವವನಾಗಿದ್ದಾನೆ.

---

وَأَقۡسَمُواْ بِٱللَّهِ جَهۡدَ أَيۡمَٰنِهِمۡ لَئِن جَآءَهُمۡ نَذِيرٞ لَّيَكُونُنَّ أَهۡدَىٰ مِنۡ إِحۡدَى ٱلۡأُمَمِۖ فَلَمَّا جَآءَهُمۡ نَذِيرٞ مَّا زَادَهُمۡ إِلَّا نُفُورًا ﴿٤٢﴾

42. ಅವರ ಬಳಿಗೆ ಒಬ್ಬ ಮುನ್ನೆಚ್ಚರಿಕೆಗಾರನು (ಪ್ರವಾದಿ) ಬಂದರೆ ಅವರು ಎಲ್ಲಾ ಸಮುದಾಯಗಳಿಗಿಂತಲೂ ಹೆಚ್ಚು ಸನ್ಮಾರ್ಗವನ್ನು ಪಡೆಯುವರು ಎಂದು ಅವರು ಅಲ್ಲಾಹನ ಮೇಲೆ ಪ್ರಬಲವಾಗಿ ಆಣೆ ಮಾಡಿ ಹೇಳಿದ್ದರು. ಆದರೆ ಅವರ ಬಳಿಗೆ ಒಬ್ಬ ಮುನ್ನೆಚ್ಚರಿಕೆಗಾರನು ಬಂದಾಗ ಅದು ಅವರಿಗೆ ದ್ವೇಷವನ್ನೇ ಹೊರತು ಇನ್ನೇನನ್ನೂ ಹೆಚ್ಚಿಸಿಕೊಡಲಿಲ್ಲ.

---

ٱسۡتِكۡبَارٗا فِي ٱلۡأَرۡضِ وَمَكۡرَ ٱلسَّيِّيِٕۚ وَلَا يَحِيقُ ٱلۡمَكۡرُ ٱلسَّيِّئُ إِلَّا بِأَهۡلِهِۦۚ فَهَلۡ يَنظُرُونَ إِلَّا سُنَّتَ ٱلۡأَوَّلِينَۚ فَلَن تَجِدَ لِسُنَّتِ ٱللَّهِ تَبۡدِيلٗاۖ وَلَن تَجِدَ لِسُنَّتِ ٱللَّهِ تَحۡوِيلًا ﴿٤٣﴾

43. ಅವರು ಭೂಮಿಯಲ್ಲಿ ತಮ್ಮನ್ನು ತಾವೇ ಶ್ರೇಷ್ಠರೆಂದು ಭಾವಿಸಿದ್ದರಿಂದ ಮತ್ತು ಕೆಟ್ಟ ಸಂಚುಗಳನ್ನು ಮಾಡಿದ್ದರಿಂದ ಹೀಗಾಯಿತು. ಕೆಟ್ಟ ಸಂಚುಗಳು ಅದನ್ನು ಮಾಡಿದವರ ಮೇಲೆಯೇ ತಿರುಗೇಟಾಗಿ ಆವರಿಸುವುದು. ಹಾಗಾದರೆ ಇವರ ಪೂರ್ವಜರ ಮೇಲೆ ಜರುಗಿಸಲಾದ ಅದೇ ಕ್ರಮಗಳನ್ನು ಇವರು ಕಾಯುತ್ತಿದ್ದಾರೆಯೇ? ಅಲ್ಲಾಹನ ಕ್ರಮದಲ್ಲಿ ನೀವು ಯಾವುದೇ ಬದಲಾವಣೆಯನ್ನು ಕಾಣಲಾರಿರಿ. ಅಲ್ಲಾಹನ ಕ್ರಮದಲ್ಲಿ ನೀವು ಯಾವುದೇ ಪರಿವರ್ತನೆಯನ್ನು ಕಾಣಲಾರಿರಿ.

---

أَوَلَمۡ يَسِيرُواْ فِي ٱلۡأَرۡضِ فَيَنظُرُواْ كَيۡفَ كَانَ

44. ಅವರು ಭೂಮಿಯಲ್ಲಿ ಸಂಚರಿಸಿ ಅವರ ಪೂರ್ವಜರ ಅಂತ್ಯವು ಹೇಗಿತ್ತೆಂದು ನೋಡಿಲ್ಲವೇ? ಅವರು ಇವರಿಗಿಂತಲೂ

عَـٰقِبَةُ ٱلَّذِينَ مِن قَبۡلِهِمۡ وَكَانُوٓاْ أَشَدَّ مِنۡهُمۡ قُوَّةٗۚ وَمَا كَانَ ٱللَّهُ لِيُعۡجِزَهُۥ مِن شَيۡءٖ فِي ٱلسَّمَٰوَٰتِ وَلَا فِي ٱلۡأَرۡضِۚ إِنَّهُۥ كَانَ عَلِيمٗا قَدِيرٗا ﴿٤٤﴾

ಹೆಚ್ಚು ಶಕ್ತಿಶಾಲಿಗಳಾಗಿದ್ದರು. ಭೂಮ್ಯಾಕಾಶಗಳಲ್ಲಿರುವ ಯಾವುದೇ ವಸ್ತುವಿಗೂ ಅಲ್ಲಾಹನನ್ನು ಸೋಲಿಸಲು ಸಾಧ್ಯವಿಲ್ಲ. ನಿಶ್ಚಯವಾಗಿಯೂ ಅವನು ಸರ್ವಜ್ಞನು ಮತ್ತು ಸರ್ವಶಕ್ತನಾಗಿದ್ದಾನೆ.

---

وَلَوۡ يُؤَاخِذُ ٱللَّهُ ٱلنَّاسَ بِمَا كَسَبُواْ مَا تَرَكَ عَلَىٰ ظَهۡرِهَا مِن دَآبَّةٖ وَلَٰكِن يُؤَخِّرُهُمۡ إِلَىٰٓ أَجَلٖ مُّسَمّٗىۖ فَإِذَا جَآءَ أَجَلُهُمۡ فَإِنَّ ٱللَّهَ كَانَ بِعِبَادِهِۦ بَصِيرَۢا ﴿٤٥﴾

45. ಮನುಷ್ಯರು ಮಾಡಿದ ಅನ್ಯಾಯಗಳ ಕಾರಣದಿಂದ ಅಲ್ಲಾಹು ಅವರನ್ನು ಹಿಡಿದು ಶಿಕ್ಷಿಸುತ್ತಿದ್ದರೆ, ಭೂಮಿಯಲ್ಲಿ ಒಂದೇ ಒಂದು ಜೀವಿಯನ್ನೂ ಅವನು ಉಳಿಸುತ್ತಿರಲಿಲ್ಲ. ಆದರೆ ಒಂದು ನಿಶ್ಚಿತ ಅವಧಿಯವರೆಗೆ ಅವನು ಅವರಿಗೆ ಕಾಲಾವಕಾಶ ನೀಡುತ್ತಾನೆ. ಅವರ ಅವಧಿಯೇನಾದರೂ ಬಂದುಬಿಟ್ಟರೆ (ಅವರಿಗೆ ಪಾರಾಗಲು ಸಾಧ್ಯವಿಲ್ಲ). ನಿಶ್ಚಯವಾಗಿಯೂ ಅಲ್ಲಾಹು ತನ್ನ ದಾಸರನ್ನು ನೋಡುತ್ತಿದ್ದಾನೆ.

# 36. ಯಾಸೀನ್

بِسۡمِ ٱللَّهِ ٱلرَّحۡمَٰنِ ٱلرَّحِيمِ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

---

يسٓ ﴿١﴾

1. ಯಾಸೀನ್.

---

وَٱلۡقُرۡءَانِ ٱلۡحَكِيمِ ﴿٢﴾

2. ವಿವೇಕಪೂರ್ಣವಾದ ಕುರ್‌ಆನಿನ ಮೇಲಾಣೆ.

---

إِنَّكَ لَمِنَ ٱلۡمُرۡسَلِينَ ﴿٣﴾

3. ನಿಶ್ಚಯವಾಗಿಯೂ ನೀವು ಸಂದೇಶವಾಹಕರುಗಳಲ್ಲಿ ಒಬ್ಬರಾಗಿದ್ದೀರಿ.

---

عَلَىٰ صِرَٰطٖ مُّسۡتَقِيمٖ ﴿٤﴾

4. ನೀವು ನೇರ ಮಾರ್ಗದಲ್ಲಿದ್ದೀರಿ.

---

تَنزِيلَ ٱلۡعَزِيزِ ٱلرَّحِيمِ ﴿٥﴾

5. ಈ ಕುರ್‌ಆನ್ ಪ್ರಬಲನು ಮತ್ತು ಕರುಣಾನಿಧಿಯಾದ ಅಲ್ಲಾಹನಿಂದ ಅವತೀರ್ಣವಾಗಿದೆ.

---

لِتُنذِرَ قَوۡمٗا مَّآ أُنذِرَ ءَابَآؤُهُمۡ فَهُمۡ غَٰفِلُونَ ﴿٦﴾

6. ನೀವು ಈ ಜನರಿಗೆ ಎಚ್ಚರಿಕೆ ನೀಡಲೆಂದು. ಅವರ ಪೂರ್ವಜರಿಗೆ ಯಾರೂ ಎಚ್ಚರಿಕೆ ನೀಡಿಲ್ಲ. ಆದ್ದರಿಂದ ಅವರು ನಿರ್ಲಕ್ಷ್ಯದಲ್ಲಿದ್ದಾರೆ.[1]

---

لَقَدۡ حَقَّ ٱلۡقَوۡلُ عَلَىٰٓ أَكۡثَرِهِمۡ فَهُمۡ لَا يُؤۡمِنُونَ ﴿٧﴾

7. ಅವರಲ್ಲಿ ಹೆಚ್ಚಿನವರ ಮೇಲೂ ಶಿಕ್ಷೆಯ ವಚನವು ಖಾತ್ರಿಯಾಗಿದೆ. ಆದ್ದರಿಂದ ಅವರು ವಿಶ್ವಾಸವಿಡುವುದಿಲ್ಲ.

---

إِنَّا جَعَلۡنَا فِيٓ أَعۡنَٰقِهِمۡ أَغۡلَٰلٗا فَهِيَ إِلَى ٱلۡأَذۡقَانِ

8. ನಾವು ಅವರ ಕೊರಳುಗಳಲ್ಲಿ ಸಂಕೋಲೆಗಳನ್ನು ಹಾಕಿದ್ದೇವೆ.

[1] ಪ್ರವಾದಿ ಇಸ್ಮಾಈಲರ (ಅವರ ಮೇಲೆ ಶಾಂತಿಯಿರಲಿ) ಬಳಿಕ ಅರೇಬಿಯನ್ ಪರ್ಯಾಯ ದ್ವೀಪಕ್ಕೆ ಬೇರೆ ಪ್ರವಾದಿಗಳು ಬಂದಿರಲಿಲ್ಲ. ಆದ್ದರಿಂದ ಅವರು ಸತ್ಯಧರ್ಮದ ಬಗ್ಗೆ ಸಂಪೂರ್ಣ ಅಜ್ಞಾನದಲ್ಲಿದ್ದರು.

فَهُم مُّقۡمَحُونَ ٨

ಅದು ಅವರ ಗಲ್ಲಗಳ ತನಕ ಇದೆ. ಆದ್ದರಿಂದ ಅವರು ತಲೆಯೆತ್ತಿಕೊಂಡೇ ಇರುತ್ತಾರೆ.

---

وَجَعَلۡنَا مِنۢ بَيۡنِ أَيۡدِيهِمۡ سَدّٗا وَمِنۡ خَلۡفِهِمۡ سَدّٗا فَأَغۡشَيۡنَٰهُمۡ فَهُمۡ لَا يُبۡصِرُونَ ٩

9. ನಾವು ಅವರ ಮುಂಭಾಗದಲ್ಲಿ ಒಂದು ಪರದೆಯನ್ನು ಮತ್ತು ಅವರ ಹಿಂಭಾಗದಲ್ಲಿ ಒಂದು ಪರದೆಯನ್ನು ಹಾಕಿ ಅವರನ್ನು ಮುಚ್ಚಿ ಬಿಟ್ಟಿದ್ದೇವೆ. ಆದ್ದರಿಂದ ಅವರಿಗೆ ನೋಡಲು ಸಾಧ್ಯವಾಗುವುದಿಲ್ಲ.

---

وَسَوَآءٌ عَلَيۡهِمۡ ءَأَنذَرۡتَهُمۡ أَمۡ لَمۡ تُنذِرۡهُمۡ لَا يُؤۡمِنُونَ ١٠

10. ನೀವು ಅವರಿಗೆ ಎಚ್ಚರಿಕೆ ನೀಡಿದರೂ ಅಥವಾ ಎಚ್ಚರಿಕೆ ನೀಡದಿದ್ದರೂ ಅವರ ಮಟ್ಟಿಗೆ ಅದು ಸಮಾನವಾಗಿದೆ. ಅವರು ವಿಶ್ವಾಸವಿಡುವುದಿಲ್ಲ.

---

إِنَّمَا تُنذِرُ مَنِ ٱتَّبَعَ ٱلذِّكۡرَ وَخَشِيَ ٱلرَّحۡمَٰنَ بِٱلۡغَيۡبِۖ فَبَشِّرۡهُ بِمَغۡفِرَةٖ وَأَجۡرٖ كَرِيمٍ ١١

11. ಯಾರು ನಿಮ್ಮ ಉಪದೇಶವನ್ನು ಅನುಸರಿಸುತ್ತಾನೋ ಮತ್ತು ಪರಮ ದಯಾಳುವಾದ ಅಲ್ಲಾಹನನ್ನು ಅದೃಶ್ಯ ಸ್ಥಿತಿಯಲ್ಲಿ ಭಯಪಡುತ್ತಾನೋ ಅವನಿಗೆ ಮಾತ್ರ ನಿಮ್ಮ ಎಚ್ಚರಿಕೆ ಪ್ರಯೋಜನ ನೀಡುತ್ತದೆ. ಆದ್ದರಿಂದ ಅವನಿಗೆ ಕ್ಷಮೆ ಮತ್ತು ಉದಾರ ಪ್ರತಿಫಲದ ಸುವಾರ್ತೆಯನ್ನು ತಿಳಿಸಿ.

---

إِنَّا نَحۡنُ نُحۡيِ ٱلۡمَوۡتَىٰ وَنَكۡتُبُ مَا قَدَّمُواْ وَءَاثَٰرَهُمۡۚ وَكُلَّ شَيۡءٍ أَحۡصَيۡنَٰهُ فِيٓ إِمَامٖ مُّبِينٖ ١٢

12. ನಿಶ್ಚಯವಾಗಿಯೂ ನಾವು ಮೃತರಿಗೆ ಜೀವ ನೀಡುತ್ತೇವೆ. ಅವರು ಮುಂದಕ್ಕೆ ಕಳುಹಿಸಿದ ಕರ್ಮಗಳನ್ನು ಮತ್ತು ಅವರು ಹಿಂದೆಯೇ ಬಿಟ್ಟಿರುವ ಕರ್ಮಗಳನ್ನು ನಾವು ದಾಖಲಿಸಿಡುತ್ತೇವೆ. ನಾವು ಎಲ್ಲಾ ವಿಷಯಗಳನ್ನೂ ಒಂದು ಸ್ಪಷ್ಟ ಗ್ರಂಥದಲ್ಲಿ ದಾಖಲಿಸಿಟ್ಟಿದ್ದೇವೆ.

---

وَٱضۡرِبۡ لَهُم مَّثَلًا أَصۡحَٰبَ ٱلۡقَرۡيَةِ إِذۡ جَآءَهَا ٱلۡمُرۡسَلُونَ ١٣

13. ಅವರಿಗೆ ಒಂದು ಊರಿನ ನಿವಾಸಿಗಳ ಉದಾಹರಣೆಯನ್ನು ತಿಳಿಸಿಕೊಡಿ. ಅಲ್ಲಿಗೆ ಸಂದೇಶವಾಹಕರುಗಳು ಬಂದ ಸಂದರ್ಭ!

---

إِذۡ أَرۡسَلۡنَآ إِلَيۡهِمُ ٱثۡنَيۡنِ فَكَذَّبُوهُمَا فَعَزَّزۡنَا بِثَالِثٖ فَقَالُوٓاْ إِنَّآ إِلَيۡكُم مُّرۡسَلُونَ ١٤

14. ನಾವು ಅವರ ಬಳಿಗೆ ಇಬ್ಬರು ಸಂದೇಶವಾಹಕರುಗಳನ್ನು ಕಳುಹಿಸಿದ್ದೆವು. ಆದರೆ ಅವರು ಆ ಇಬ್ಬರು ಸಂದೇಶವಾಹಕರನ್ನೂ ನಿಷೇಧಿಸಿದರು. ಆಗ ಅವರಿಗೆ ಬಲ ನೀಡುವುದಕ್ಕಾಗಿ ನಾವು ಮೂರನೆಯವರನ್ನು ಕಳುಹಿಸಿದೆವು. ಅವರು ಹೇಳಿದರು: "ನಿಶ್ಚಯವಾಗಿಯೂ ನಮ್ಮನ್ನು ನಿಮ್ಮ ಬಳಿಗೆ ಕಳುಹಿಸಲಾಗಿದೆ."

---

قَالُواْ مَآ أَنتُمۡ إِلَّا بَشَرٞ مِّثۡلُنَا وَمَآ أَنزَلَ ٱلرَّحۡمَٰنُ مِن شَيۡءٍ إِنۡ أَنتُمۡ إِلَّا تَكۡذِبُونَ ١٥

15. ಜನರು ಹೇಳಿದರು: "ನೀವು ನಮ್ಮಂತೆಯೇ ಇರುವ ಮನುಷ್ಯರಾಗಿದ್ದೀರಿ. ಪರಮ ದಯಾಳು (ಅಲ್ಲಾಹು) ಏನನ್ನೂ ಅವತೀರ್ಣಗೊಳಿಸಿಲ್ಲ. ನೀವು ಕೇವಲ ಸುಳ್ಳು ಹೇಳುತ್ತಿದ್ದೀರಿ."

---

قَالُواْ رَبُّنَا يَعۡلَمُ إِنَّآ إِلَيۡكُمۡ لَمُرۡسَلُونَ ١٦

16. ಸಂದೇಶವಾಹಕರುಗಳು ಹೇಳಿದರು: "ನಮ್ಮನ್ನು ನಿಮ್ಮ ಬಳಿಗೆ ಕಳುಹಿಸಲಾಗಿದೆಯೆಂದು ನಮ್ಮ ಪರಿಪಾಲಕನಿಗೆ (ಅಲ್ಲಾಹನಿಗೆ) ತಿಳಿದಿದೆ.

17. ನಮ್ಮ ಕರ್ತವ್ಯವು ಸಂದೇಶವನ್ನು ಸ್ಪಷ್ಟವಾಗಿ ತಲುಪಿಸುವುದು ಮಾತ್ರವಾಗಿದೆ.”

وَمَا عَلَيْنَآ إِلَّا ٱلْبَلَٰغُ ٱلْمُبِينُ ﴿١٧﴾

18. ಜನರು ಹೇಳಿದರು: “ನಾವು ನಿಮ್ಮನ್ನು ಅಪಶಕುನವೆಂದು ಭಾವಿಸಿದ್ದೇವೆ. ನೀವು (ನಿಮ್ಮ ಧರ್ಮಪ್ರಚಾರವನ್ನು) ನಿಲ್ಲಿಸದಿದ್ದರೆ ನಾವು ನಿಮ್ಮನ್ನು ಖಂಡಿತ ಕಲ್ಲೆಸೆದು ಸಾಯಿಸುವೆವು ಮತ್ತು ನಿಮಗೆ ನಮ್ಮ ಕಡೆಯ ಯಾತನಾಮಯ ಶಿಕ್ಷೆಯನ್ನು ಅನುಭವಿಸಬೇಕಾಗಿ ಬರುವುದು.”

قَالُوٓاْ إِنَّا تَطَيَّرۡنَا بِكُمۡۖ لَئِن لَّمۡ تَنتَهُواْ لَنَرۡجُمَنَّكُمۡ وَلَيَمَسَّنَّكُم مِّنَّا عَذَابٌ أَلِيمٞ ﴿١٨﴾

19. ಸಂದೇಶವಾಹಕರುಗಳು ಹೇಳಿದರು: “ನಿಮ್ಮ ಅಪಶಕುನವು ನಿಮ್ಮ ಜೊತೆಯಲ್ಲೇ ಇದೆ. ನಿಮಗೆ ಉಪದೇಶ ನೀಡಿದರೆ ನೀವು ಅದನ್ನು ಅಪಶಕುನ ಎನ್ನುತ್ತೀರಾ? ಅಲ್ಲ, ವಾಸ್ತವವಾಗಿ ನೀವು ಎಲ್ಲೆ ಮೀರಿದ ಜನರಾಗಿದ್ದೀರಿ.”

قَالُواْ طَٰٓئِرُكُم مَّعَكُمۡ أَئِن ذُكِّرۡتُمۚ بَلۡ أَنتُمۡ قَوۡمٞ مُّسۡرِفُونَ ﴿١٩﴾

20. ನಗರದ ತುತ್ತತುದಿಯಿಂದ ಒಬ್ಬ ವ್ಯಕ್ತಿ ಓಡುತ್ತಾ ಬಂದನು. ಅವನು ಹೇಳಿದನು: “ಓ ನನ್ನ ಜನರೇ! ನೀವು ಸಂದೇಶವಾಹಕರುಗಳನ್ನು ಅನುಸರಿಸಿರಿ.

وَجَآءَ مِنۡ أَقۡصَا ٱلۡمَدِينَةِ رَجُلٞ يَسۡعَىٰ قَالَ يَٰقَوۡمِ ٱتَّبِعُواْ ٱلۡمُرۡسَلِينَ ﴿٢٠﴾

21. ನಿಮ್ಮಿಂದ ಯಾವುದೇ ಪ್ರತಿಫಲವನ್ನು ಕೇಳದ ಮತ್ತು ಸನ್ಮಾರ್ಗದಲ್ಲಿರುವ ಇವರನ್ನು ಅನುಸರಿಸಿರಿ.

ٱتَّبِعُواْ مَن لَّا يَسۡـَٔلُكُمۡ أَجۡرٗا وَهُم مُّهۡتَدُونَ ﴿٢١﴾

22. ನನ್ನನ್ನು ಸೃಷ್ಟಿಸಿದವನನ್ನು ಆರಾಧಿಸದಿರಲು ನನಗೇನು ಹಕ್ಕಿದೆ? ನಿಮ್ಮನ್ನು ಅವನ ಬಳಿಗೇ ಮರಳಿಸಲಾಗುವುದು.

وَمَا لِيَ لَآ أَعۡبُدُ ٱلَّذِي فَطَرَنِي وَإِلَيۡهِ تُرۡجَعُونَ ﴿٢٢﴾

23. ನಾನು ಅವನನ್ನು (ಅಲ್ಲಾಹನನ್ನು) ಬಿಟ್ಟು ಬೇರೆ ದೇವರುಗಳನ್ನು ಸ್ವೀಕರಿಸಬೇಕೇ? ಪರಮ ದಯಾಳು (ಅಲ್ಲಾಹು) ನನಗೇನಾದರೂ ತೊಂದರೆ ಕೊಡಲು ಬಯಸಿದರೆ ಅವರು (ಆ ದೇವರುಗಳು) ಮಾಡುವ ಶಿಫಾರಸು ನನಗೆ ಸ್ವಲ್ಪವೂ ಪ್ರಯೋಜನವಾಗುವುದಿಲ್ಲ. ಅವರು ನನ್ನನ್ನು ರಕ್ಷಿಸುವುದೂ ಇಲ್ಲ.

ءَأَتَّخِذُ مِن دُونِهِۦٓ ءَالِهَةً إِن يُرِدۡنِ ٱلرَّحۡمَٰنُ بِضُرّٖ لَّا تُغۡنِ عَنِّي شَفَٰعَتُهُمۡ شَيۡـٔٗا وَلَا يُنقِذُونِ ﴿٢٣﴾

24. ಹಾಗೇನಾದರೂ ಆದರೆ, ನಾನು ಸ್ಪಷ್ಟವಾಗಿ ದಾರಿತಪ್ಪುವುದು ನಿಶ್ಚಿತ.

إِنِّيٓ إِذٗا لَّفِي ضَلَٰلٖ مُّبِينٍ ﴿٢٤﴾

25. ನಿಶ್ಚಯವಾಗಿಯೂ ನಾನು ನಿಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ವಿಶ್ವಾಸವಿಟ್ಟಿದ್ದೇನೆ. ಆದ್ದರಿಂದ ನೀವು ನನ್ನ ಮಾತಿಗೆ ಕಿವಿಗೊಡಿ.”

إِنِّيٓ ءَامَنتُ بِرَبِّكُمۡ فَٱسۡمَعُونِ ﴿٢٥﴾

26. ಆ ವ್ಯಕ್ತಿಯೊಡನೆ ಹೇಳಲಾಯಿತು: “ಸ್ವರ್ಗವನ್ನು ಪ್ರವೇಶಿಸಿ.” ಆ ವ್ಯಕ್ತಿ ಹೇಳಿದರು: “ನನ್ನ ಜನರು ಇದನ್ನು ತಿಳಿಯುತ್ತಿದ್ದರೆ ಎಷ್ಟು ಚೆನ್ನಾಗಿತ್ತು!

قِيلَ ٱدۡخُلِ ٱلۡجَنَّةَۖ قَالَ يَٰلَيۡتَ قَوۡمِي يَعۡلَمُونَ ﴿٢٦﴾

27. ಅಂದರೆ, ನನ್ನ ಪರಿಪಾಲಕ (ಅಲ್ಲಾಹು) ನನ್ನನ್ನು ಕ್ಷಮಿಸಿದ್ದಾನೆ ಮತ್ತು ನನ್ನನ್ನು ಗಣ್ಯರಲ್ಲಿ ಸೇರಿಸಿದ್ದಾನೆಂದು."[1]

بِمَا غَفَرَ لِي رَبِّي وَجَعَلَنِي مِنَ ٱلْمُكْرَمِينَ ﴿٢٧﴾

28. ಅವರ ಬಳಿಕ ಅವರ ಜನರ ಮೇಲೆ ನಾವು ಆಕಾಶದಿಂದ ಯಾವುದೇ ಸೈನ್ಯವನ್ನು ಇಳಿಸಲಿಲ್ಲ. ನಾವು ಆ ರೀತಿ ಇಳಿಸುವವರೂ ಅಲ್ಲ.

وَمَآ أَنزَلْنَا عَلَىٰ قَوْمِهِۦ مِنۢ بَعْدِهِۦ مِن جُندٍ مِّنَ ٱلسَّمَآءِ وَمَا كُنَّا مُنزِلِينَ ﴿٢٨﴾

29. ಅದು ಒಂದು ಮಹಾ ಚೀತ್ಕಾರ ಮಾತ್ರವಾಗಿತ್ತು. ಆಗ ಹಠಾತ್ತನೆ ಅವರೆಲ್ಲರೂ ಸರ್ವನಾಶವಾದರು.

إِن كَانَتْ إِلَّا صَيْحَةً وَٰحِدَةً فَإِذَا هُمْ خَٰمِدُونَ ﴿٢٩﴾

30. ಅಯ್ಯೋ ನನ್ನ ದಾಸರೇ! ಅವರ ಬಳಿಗೆ ಸಂದೇಶವಾಹಕರು ಬಂದಾಗಲೆಲ್ಲಾ ಅವರು ಆ ಸಂದೇಶವಾಹಕರನ್ನು ತಮಾಷೆ ಮಾಡುತ್ತಲೇ ಇದ್ದರು.

يَٰحَسْرَةً عَلَى ٱلْعِبَادِ ۚ مَا يَأْتِيهِم مِّن رَّسُولٍ إِلَّا كَانُوا۟ بِهِۦ يَسْتَهْزِءُونَ ﴿٣٠﴾

31. ಏನು ಅವರು ನೋಡಿಲ್ಲವೇ? ಅವರಿಗಿಂತ ಮೊದಲು ನಾವು ಎಷ್ಟೆಷ್ಟು ತಲೆಮಾರುಗಳನ್ನು ನಾಶ ಮಾಡಿದ್ದೇವೆ ಮತ್ತು ಅವರಲ್ಲಿ ಯಾರೂ ಇವರ ಬಳಿಗೆ ಮರಳಿ ಬರುವುದಿಲ್ಲವೆಂದು.

أَلَمْ يَرَوْا۟ كَمْ أَهْلَكْنَا قَبْلَهُم مِّنَ ٱلْقُرُونِ أَنَّهُمْ إِلَيْهِمْ لَا يَرْجِعُونَ ﴿٣١﴾

32. ನಿಶ್ಚಯವಾಗಿಯೂ ಅವರಲ್ಲಿ ಯಾರನ್ನೂ ಬಿಡದೆ ಎಲ್ಲರನ್ನೂ ನಮ್ಮ ಮುಂದೆ ಹಾಜರುಪಡಿಸಲಾಗುವುದು.

وَإِن كُلٌّ لَّمَّا جَمِيعٌ لَّدَيْنَا مُحْضَرُونَ ﴿٣٢﴾

33. ಬರಡು ಭೂಮಿಯು ಅವರಿಗೊಂದು ದೃಷ್ಟಾಂತವಾಗಿದೆ. ನಾವು ಅದಕ್ಕೆ ಜೀವವನ್ನು ನೀಡಿದೆವು ಮತ್ತು ಅದರಿಂದ ಧಾನ್ಯವನ್ನು ಉತ್ಪಾದಿಸಿದೆವು. ಅವರು ಅದರಿಂದ ತಿನ್ನುತ್ತಿದ್ದಾರೆ.

وَءَايَةٌ لَّهُمُ ٱلْأَرْضُ ٱلْمَيْتَةُ أَحْيَيْنَٰهَا وَأَخْرَجْنَا مِنْهَا حَبًّا فَمِنْهُ يَأْكُلُونَ ﴿٣٣﴾

34. ನಾವು ಅಲ್ಲಿ ಖರ್ಜೂರ ಮತ್ತು ದ್ರಾಕ್ಷಿಗಳ ತೋಟಗಳನ್ನು ಮಾಡಿಕೊಟ್ಟೆವು. ನಾವು ಅದರಲ್ಲಿ ಚಿಲುಮೆಗಳನ್ನೂ ಹರಿಸಿದೆವು.

وَجَعَلْنَا فِيهَا جَنَّٰتٍ مِّن نَّخِيلٍ وَأَعْنَٰبٍ وَفَجَّرْنَا فِيهَا مِنَ ٱلْعُيُونِ ﴿٣٤﴾

35. ಅವರು ಅದರ ಹಣ್ಣುಗಳನ್ನು ತಿನ್ನಲೆಂದು. ಅದನ್ನು ಅವರ ಕೈಗಳು ಉತ್ಪಾದಿಸಿಲ್ಲ. ಆದರೂ ಅವರು ಕೃತಜ್ಞರಾಗುವುದಿಲ್ಲವೇ?

لِيَأْكُلُوا۟ مِن ثَمَرِهِۦ وَمَا عَمِلَتْهُ أَيْدِيهِمْ ۖ أَفَلَا يَشْكُرُونَ ﴿٣٥﴾

36. ಭೂಮಿ ಉತ್ಪಾದಿಸುವ ಸಸ್ಯಲತಾದಿಗಳು, ಅವರ (ಮನುಷ್ಯರ) ವರ್ಗಗಳು ಮತ್ತು ಅವರಿಗೆ ತಿಳಿದಿಲ್ಲದ ವಸ್ತುಗಳು ಮುಂತಾದ ಎಲ್ಲದರಲ್ಲೂ ಜೋಡಿಗಳನ್ನು ಸೃಷ್ಟಿಸಿದ ಅಲ್ಲಾಹು ಪರಿಶುದ್ಧನಾಗಿದ್ದಾನೆ.

سُبْحَٰنَ ٱلَّذِى خَلَقَ ٱلْأَزْوَٰجَ كُلَّهَا مِمَّا تُنۢبِتُ ٱلْأَرْضُ وَمِنْ أَنفُسِهِمْ وَمِمَّا لَا يَعْلَمُونَ ﴿٣٦﴾

37. ರಾತ್ರಿ ಅವರಿಗೆ ಒಂದು ದೃಷ್ಟಾಂತವಾಗಿದೆ. ನಾವು ಅದರಿಂದ ಹಗಲನ್ನು ಎಳೆದು ತೆಗೆಯುತ್ತೇವೆ. ಆಗ ಅಗೋ! ಅವರು ಇರುಳಿನಲ್ಲಿರುತ್ತಾರೆ.

وَءَايَةٌ لَّهُمُ ٱلَّيْلُ نَسْلَخُ مِنْهُ ٱلنَّهَارَ فَإِذَا هُم مُّظْلِمُونَ ﴿٣٧﴾

---

[1] ಆ ಊರಿನ ಸತ್ಯನಿಷೇಧಿ ಜನರು ಆ ವ್ಯಕ್ತಿಯನ್ನು ಕೊಂದರು. ಮರಣದ ನಂತರವೂ ಆ ವ್ಯಕ್ತಿ ತನ್ನ ಜನರ ಹಿತಚಿಂತಕರಾಗಿದ್ದರೆಂದು ಅವರ ಈ ಮಾತುಗಳಿಂದ ಅರ್ಥಮಾಡಿಕೊಳ್ಳಬಹುದು.

38. ಸೂರ್ಯ ಅದರ ನಿಶ್ಚಿತ ಪಥದಲ್ಲಿ ಚಲಿಸುತ್ತಿದೆ. ಅದು ಪ್ರಬಲನು ಮತ್ತು ಸರ್ವಜ್ಞನಾದ ಅಲ್ಲಾಹನ ನಿರ್ಣಯವಾಗಿದೆ.

وَٱلشَّمۡسُ تَجۡرِي لِمُسۡتَقَرّٖ لَّهَاۚ ذَٰلِكَ تَقۡدِيرُ ٱلۡعَزِيزِ ٱلۡعَلِيمِ ٣٨

39. ನಾವು ಚಂದ್ರನಿಗೆ ಕೆಲವು ಹಂತಗಳನ್ನು ನಿರ್ಣಯಿಸಿದ್ದೇವೆ. ಎಲ್ಲಿ-ಯವರೆಗೆಂದರೆ, ಅದು ಹಳೆಯ ಖರ್ಜೂರದ ದಿಂಡಿನ ರೂಪಕ್ಕೆ ಮರಳುತ್ತದೆ.

وَٱلۡقَمَرَ قَدَّرۡنَٰهُ مَنَازِلَ حَتَّىٰ عَادَ كَٱلۡعُرۡجُونِ ٱلۡقَدِيمِ ٣٩

40. ಸೂರ್ಯನಿಗೆ ಚಂದ್ರನನ್ನು ಮುಟ್ಟಲು ಸಾಧ್ಯವಿಲ್ಲ. ರಾತ್ರಿ ಹಗಲನ್ನು ದಾಟಿಹೋಗುವುದಿಲ್ಲ. ಎಲ್ಲವೂ ಅವುಗಳ ನಿಶ್ಚಿತ ಕಕ್ಷೆಗಳಲ್ಲಿ ಈಜುತ್ತಿವೆ.

لَا ٱلشَّمۡسُ يَنۢبَغِي لَهَآ أَن تُدۡرِكَ ٱلۡقَمَرَ وَلَا ٱلَّيۡلُ سَابِقُ ٱلنَّهَارِۚ وَكُلّٞ فِي فَلَكٖ يَسۡبَحُونَ ٤٠

41. ನಾವು ಅವರ ಸಂತಾನವನ್ನು ತುಂಬಿ ತುಳುಕುವ ನಾವೆಯಲ್ಲಿ ಹೊತ್ತು ಸಾಗಿಸಿದ್ದು ಅವರಿಗೊಂದು ದೃಷ್ಟಾಂತವಾಗಿದೆ.

وَءَايَةٞ لَّهُمۡ أَنَّا حَمَلۡنَا ذُرِّيَّتَهُمۡ فِي ٱلۡفُلۡكِ ٱلۡمَشۡحُونِ ٤١

42. ಅವರು ಸವಾರಿ ಮಾಡಲು ಬಳಸುವ ಇಂತಹ ಅನೇಕ ವಸ್ತುಗಳನ್ನು ನಾವು ಸೃಷ್ಟಿಸಿದ್ದೇವೆ.

وَخَلَقۡنَا لَهُم مِّن مِّثۡلِهِۦ مَا يَرۡكَبُونَ ٤٢

43. ನಾವು ಇಚ್ಛಿಸಿದರೆ ಅವರನ್ನು ಮುಳುಗಿಸಿ ಬಿಡುವೆವು. ಆಗ ಅವರ ಕೂಗನ್ನು ಕೇಳುವವರು ಯಾರೂ ಇರಲಾರರು. ಅವರು ಸ್ವತಃ ರಕ್ಷಣೆಯನ್ನೂ ಪಡೆಯಲಾರರು.

وَإِن نَّشَأۡ نُغۡرِقۡهُمۡ فَلَا صَرِيخَ لَهُمۡ وَلَا هُمۡ يُنقَذُونَ ٤٣

44. ಆದರೆ ನಾವು ನಮ್ಮ ಕಡೆಯ ದಯೆಯಿಂದ ಅವರನ್ನು ರಕ್ಷಿಸುತ್ತೇವೆ ಮತ್ತು ಒಂದು ನಿಶ್ಚಿತ ಕಾಲದವರೆಗೆ ಅವರಿಗೆ ಸವಲತ್ತುಗಳನ್ನು ನೀಡುತ್ತೇವೆ.

إِلَّا رَحۡمَةٗ مِّنَّا وَمَتَٰعًا إِلَىٰ حِينٖ ٤٤

45. “ಮುಂದೆ ಉಂಟಾಗಲಿರುವ ಮತ್ತು ಈಗಾಗಲೇ ಉಂಟಾಗಿರುವ ಪಾಪಗಳ ಬಗ್ಗೆ ಎಚ್ಚರವಾಗಿರಿ; ನಿಮಗೆ ದಯೆ ತೋರಲಾಗುವು-ದಕ್ಕಾಗಿ” ಎಂದು ಅವರೊಡನೆ ಹೇಳಲಾದರೆ (ಅವರು ಅದನ್ನು ನಿರ್ಲಕ್ಷಿಸುತ್ತಾರೆ).

وَإِذَا قِيلَ لَهُمُ ٱتَّقُواْ مَا بَيۡنَ أَيۡدِيكُمۡ وَمَا خَلۡفَكُمۡ لَعَلَّكُمۡ تُرۡحَمُونَ ٤٥

46. ಅವರ ಪರಿಪಾಲಕನ (ಅಲ್ಲಾಹನ) ಕಡೆಯ ದೃಷ್ಟಾಂತಗಳಲ್ಲಿ ಯಾವುದೇ ದೃಷ್ಟಾಂತವು ಅವರ ಬಳಿಗೆ ಬಂದರೂ ಅವರು ಅದನ್ನು ನಿರ್ಲಕ್ಷಿಸಿ ವಿಮುಖರಾಗುತ್ತಿದ್ದರು.

وَمَا تَأۡتِيهِم مِّنۡ ءَايَةٖ مِّنۡ ءَايَٰتِ رَبِّهِمۡ إِلَّا كَانُواْ عَنۡهَا مُعۡرِضِينَ ٤٦

47. “ಅಲ್ಲಾಹು ನಿಮಗೆ ಒದಗಿಸಿದ ಸಂಪತ್ತಿನಿಂದ ಖರ್ಚು ಮಾಡಿರಿ”[1] ಎಂದು ಅವರೊಡನೆ ಹೇಳಲಾದರೆ ಸತ್ಯನಿಷೇಧಿಗಳು ಸತ್ಯವಿಶ್ವಾ-ಸಿಗಳೊಡನೆ ಹೇಳುತ್ತಾರೆ: “ಅಲ್ಲಾಹು ಇಚ್ಛಿಸಿದರೆ ಅವನೇ ಆಹಾರ ನೀಡಬಹುದಾದ ಈ ಜನರಿಗೆ ನಾವೇಕೆ ಆಹಾರ ನೀಡಬೇಕು?

وَإِذَا قِيلَ لَهُمۡ أَنفِقُواْ مِمَّا رَزَقَكُمُ ٱللَّهُ قَالَ ٱلَّذِينَ كَفَرُواْ لِلَّذِينَ ءَامَنُوٓاْ أَنُطۡعِمُ مَن لَّوۡ يَشَآءُ ٱللَّهُ أَطۡعَمَهُۥٓ إِنۡ أَنتُمۡ إِلَّا فِي ضَلَٰلٖ مُّبِينٖ ٤٧

[1] ಅಂದರೆ ಬಡವರು, ನಿರ್ಗತಿಕರು ಮುಂತಾದವರಿಗೆ ದಾನ ಮಾಡಿರಿ.

ನಿಜಕ್ಕೂ ನೀವು ಸ್ಪಷ್ಟ ದುರ್ಮಾರ್ಗದಲ್ಲಿದ್ದೀರಿ."[1]

48. ಅವರು ಹೇಳುತ್ತಾರೆ: "ನೀವು ಸತ್ಯವಂತರಾಗಿದ್ದರೆ ಈ ವಾಗ್ದಾನವು ಯಾವಾಗ ನಿಜವಾಗುತ್ತದೆಂದು ಹೇಳಿರಿ."

وَيَقُولُونَ مَتَىٰ هَٰذَا ٱلْوَعْدُ إِن كُنتُمْ صَٰدِقِينَ ﴿٤٨﴾

49. ಅವರು ಒಂದು ಮಹಾ ಚೀತ್ಕಾರವನ್ನು ಮಾತ್ರ ಕಾಯುತ್ತಿದ್ದಾರೆ. ಅವರು ಪರಸ್ಪರ ತರ್ಕಿಸುತ್ತಿರುವಾಗಲೇ ಅದು ಅವರನ್ನು ಹಿಡಿಯುವುದು.

مَا يَنظُرُونَ إِلَّا صَيْحَةً وَٰحِدَةً تَأْخُذُهُمْ وَهُمْ يَخِصِّمُونَ ﴿٤٩﴾

50. ಆಗ ಯಾವುದೇ ಉಯಿಲು ಮಾಡಲು ಅವರಿಗೆ ಸಾಧ್ಯವಾಗುವುದಿಲ್ಲ. ತಮ್ಮ ಮನೆಯವರ ಬಳಿಗೆ ಮರಳಲೂ ಸಾಧ್ಯವಾಗುವುದಿಲ್ಲ.

فَلَا يَسْتَطِيعُونَ تَوْصِيَةً وَلَآ إِلَىٰٓ أَهْلِهِمْ يَرْجِعُونَ ﴿٥٠﴾

51. ಕಹಳೆಯಲ್ಲಿ ಊದಲಾಗುವುದು. ಆಗ ಅಗೋ! ಅವರು ಸಮಾಧಿಗಳಿಂದ ಎದ್ದು ತಮ್ಮ ಪರಿಪಾಲಕನ (ಅಲ್ಲಾಹನ) ಬಳಿಗೆ ಧಾವಿಸುವರು.

وَنُفِخَ فِى ٱلصُّورِ فَإِذَا هُم مِّنَ ٱلْأَجْدَاثِ إِلَىٰ رَبِّهِمْ يَنسِلُونَ ﴿٥١﴾

52. ಅವರು ಹೇಳುವರು: "ಅಯ್ಯೋ! ನಮ್ಮ ದುರ್ಗತಿಯೇ! ನಮ್ಮನ್ನು ನಿದ್ದೆಯಿಂದ ಎಬ್ಬಿಸಿದ್ದು ಯಾರು?" (ಆಗ ಅವರಿಗೆ ಉತ್ತರ ನೀಡಲಾಗುವುದು): "ಇದು ಪರಮ ದಯಾಳು (ಅಲ್ಲಾಹು) ಮಾಡಿದ ವಾಗ್ದಾನವಾಗಿದೆ ಮತ್ತು ಸಂದೇಶವಾಹಕರುಗಳು ಈ ಸತ್ಯವನ್ನು ನಿಮಗೆ ತಿಳಿಸಿದ್ದರು."

قَالُوا۟ يَٰوَيْلَنَا مَنۢ بَعَثَنَا مِن مَّرْقَدِنَا ۜ ۗ هَٰذَا مَا وَعَدَ ٱلرَّحْمَٰنُ وَصَدَقَ ٱلْمُرْسَلُونَ ﴿٥٢﴾

53. ಅದು ಕೇವಲ ಒಂದು ಚೀತ್ಕಾರ ಮಾತ್ರವಾಗಿರುತ್ತದೆ. ಆಗ ಅಗೋ! ಅವರೆಲ್ಲರನ್ನೂ ನಮ್ಮ ಮುಂದೆ ಹಾಜರುಪಡಿಸಲಾಗುತ್ತದೆ.

إِن كَانَتْ إِلَّا صَيْحَةً وَٰحِدَةً فَإِذَا هُمْ جَمِيعٌ لَّدَيْنَا مُحْضَرُونَ ﴿٥٣﴾

54. ಆ ದಿನ ಯಾರಿಗೂ ಸ್ವಲ್ಪವೂ ಅನ್ಯಾಯವಾಗುವುದಿಲ್ಲ. ನೀವು ಮಾಡಿದ ಕರ್ಮಗಳ ಪ್ರತಿಫಲವನ್ನೇ ಹೊರತು ಬೇರೇನೂ ನಿಮಗೆ ನೀಡಲಾಗುವುದಿಲ್ಲ.

فَٱلْيَوْمَ لَا تُظْلَمُ نَفْسٌ شَيْـًٔا وَلَا تُجْزَوْنَ إِلَّا مَا كُنتُمْ تَعْمَلُونَ ﴿٥٤﴾

55. ನಿಶ್ಚಯವಾಗಿಯೂ ಅಂದು ಸ್ವರ್ಗವಾಸಿಗಳು (ಆನಂದದಾಯಕ) ಕೆಲಸ-ಕಾರ್ಯಗಳಲ್ಲಿ ನಿರತರಾಗಿರುವರು.

إِنَّ أَصْحَٰبَ ٱلْجَنَّةِ ٱلْيَوْمَ فِى شُغُلٍ فَٰكِهُونَ ﴿٥٥﴾

56. ಅವರು ಮತ್ತು ಅವರ ಮಡದಿಯರು ನೆರಳುಗಳಲ್ಲಿ ಮಂಚಗಳ ಮೇಲೆ ಒರಗಿ ಕುಳಿತಿರುವರು.

هُمْ وَأَزْوَٰجُهُمْ فِى ظِلَٰلٍ عَلَى ٱلْأَرَآئِكِ مُتَّكِـُٔونَ ﴿٥٦﴾

57. ಅಲ್ಲಿ ಅವರಿಗೆ ಅನೇಕ ತರಹದ ಹಣ್ಣು-ಹಂಪಲುಗಳಿರುವುವು.

لَهُمْ فِيهَا فَٰكِهَةٌ وَلَهُم مَّا يَدَّعُونَ ﴿٥٧﴾

---

[1] ಅವರು ಬಡವರಾಗಿರಬೇಕು ಎಂಬುದು ಅಲ್ಲಾಹನ ನಿರ್ಧಾರವಾಗಿದೆ. ಅವನು ಇಚ್ಛಿಸುತ್ತಿದ್ದರೆ ಅವರನ್ನು ಶ್ರೀಮಂತರನ್ನಾಗಿ ಮಾಡುತ್ತಿದ್ದನು. ನಾವು ಅವರಿಗೆ ದಾನ ಮಾಡಬೇಕೆಂದು ಹೇಳುವುದು ಅಲ್ಲಾಹನ ನಿರ್ಧಾರಕ್ಕೆ ವಿರುದ್ಧವಾಗುತ್ತದೆ. ಇದು ಸ್ಪಷ್ಟ ದುರ್ಮಾರ್ಗವಾಗಿದೆ ಎಂದು ಅವರು ಹೇಳುತ್ತಿದ್ದರು.

ಅವರು ಕೇಳುವುದೆಲ್ಲವೂ ಅಲ್ಲಿ ಅವರಿಗೆ ದೊರೆಯುವುದು.

58. ಕರುಣಾನಿಧಿಯಾದ ಪರಿಪಾಲಕನ (ಅಲ್ಲಾಹನ) ಕಡೆಯಿಂದ ಅವರಿಗೆ ಸಲಾಂ ಹೇಳಲಾಗುವುದು.

سَلَٰمٞ قَوۡلٗا مِّن رَّبّٖ رَّحِيمٖ ﴿٥٨﴾

59. "ಅಪರಾಧಿಗಳೇ! ಇಂದು ನೀವು ಬೇರ್ಪಟ್ಟು ನಿಲ್ಲಿರಿ" (ಎಂದು ಘೋಷಿಸಲಾಗುವುದು).

وَٱمۡتَٰزُواْ ٱلۡيَوۡمَ أَيُّهَا ٱلۡمُجۡرِمُونَ ﴿٥٩﴾

60. ಓ ಆದಮ್ ಸಂತತಿಗಳೇ! ನೀವು ಶೈತಾನನನ್ನು ಆರಾಧಿಸಬೇಡಿ. ನಿಶ್ಚಯವಾಗಿಯೂ ಅವನು ನಿಮ್ಮ ಸ್ಪಷ್ಟ ವೈರಿಯಾಗಿದ್ದಾನೆ ಎಂದು ನಾನು ನಿಮಗೆ ಆದೇಶಿಸಿರಲಿಲ್ಲವೇ?

أَلَمۡ أَعۡهَدۡ إِلَيۡكُمۡ يَٰبَنِيٓ ءَادَمَ أَن لَّا تَعۡبُدُواْ ٱلشَّيۡطَٰنَۖ إِنَّهُۥ لَكُمۡ عَدُوّٞ مُّبِينٞ ﴿٦٠﴾

61. ನನ್ನನ್ನು ಮಾತ್ರ ಆರಾಧಿಸಿರಿ. ಇದೇ ನೇರ ಮಾರ್ಗ ಎಂದು.

وَأَنِ ٱعۡبُدُونِيۚ هَٰذَا صِرَٰطٞ مُّسۡتَقِيمٞ ﴿٦١﴾

62. ನಿಶ್ಚಯವಾಗಿಯೂ ನಿಮ್ಮಲ್ಲಿ ಸೇರಿದ ಎಷ್ಟೋ ಜನರನ್ನು ಅವನು ದಾರಿತಪ್ಪಿಸಿದ್ದಾನೆ. ಆದರೂ ನೀವು ಅರ್ಥಮಾಡಿಕೊಳ್ಳುವುದಿಲ್ಲವೇ?

وَلَقَدۡ أَضَلَّ مِنكُمۡ جِبِلّٗا كَثِيرًاۖ أَفَلَمۡ تَكُونُواْ تَعۡقِلُونَ ﴿٦٢﴾

63. ಇದೇ ನಿಮಗೆ ಎಚ್ಚರಿಕೆ ನೀಡಲಾದ ಆ ನರಕಾಗ್ನಿ!

هَٰذِهِۦ جَهَنَّمُ ٱلَّتِي كُنتُمۡ تُوعَدُونَ ﴿٦٣﴾

64. ನಿಮ್ಮ ಸತ್ಯನಿಷೇಧದ ಪ್ರತಿಫಲ ಪಡೆಯಲು ನೀವು ಇಂದು ಅದನ್ನು ಪ್ರವೇಶಿಸಿರಿ.

ٱصۡلَوۡهَا ٱلۡيَوۡمَ بِمَا كُنتُمۡ تَكۡفُرُونَ ﴿٦٤﴾

65. ಇಂದು ನಾವು ಅವರ ಬಾಯಿಗಳಿಗೆ ಮೊಹರು ಹಾಕುವೆವು, ಅವರ ಕೈಗಳು ನಮ್ಮೊಡನೆ ಮಾತನಾಡುವುವು ಮತ್ತು ಅವರ ಕಾಲುಗಳು ಅವರು ಮಾಡಿದ ದುಷ್ಕರ್ಮಗಳಿಗೆ ಸಾಕ್ಷಿ ಹೇಳುವುವು.

ٱلۡيَوۡمَ نَخۡتِمُ عَلَىٰٓ أَفۡوَٰهِهِمۡ وَتُكَلِّمُنَآ أَيۡدِيهِمۡ وَتَشۡهَدُ أَرۡجُلُهُم بِمَا كَانُواْ يَكۡسِبُونَ ﴿٦٥﴾

66. ನಾವು ಬಯಸಿದರೆ ಅವರ ಕಣ್ಣುಗಳನ್ನು ಕುರುಡಾಗಿಸುವೆವು. ಆದರೂ ಅವರು ಮಾರ್ಗದ ಕಡೆಗೆ ಧಾವಿಸುವರು. ಆದರೆ ಅವರಿಗೆ ನೋಡಲು ಸಾಧ್ಯವಾಗುವುದು ಹೇಗೆ?

وَلَوۡ نَشَآءُ لَطَمَسۡنَا عَلَىٰٓ أَعۡيُنِهِمۡ فَٱسۡتَبَقُواْ ٱلصِّرَٰطَ فَأَنَّىٰ يُبۡصِرُونَ ﴿٦٦﴾

67. ನಾವು ಬಯಸಿದರೆ ಅವರು ನಿಂತ ಸ್ಥಳದಲ್ಲಿಯೇ ಅವರ ರೂಪವನ್ನು ವಿರೂಪಗೊಳಿಸುವೆವು. ಆಗ ಅವರಿಗೆ ಮುಂದಕ್ಕೆ ಹೋಗಲು ಸಾಧ್ಯವಾಗುವುದಿಲ್ಲ. ಹಿಂದಕ್ಕೆ ಮರಳಲೂ ಸಾಧ್ಯವಾಗುವುದಿಲ್ಲ.

وَلَوۡ نَشَآءُ لَمَسَخۡنَٰهُمۡ عَلَىٰ مَكَانَتِهِمۡ فَمَا ٱسۡتَطَٰعُواْ مُضِيّٗا وَلَا يَرۡجِعُونَ ﴿٦٧﴾

68. ನಾವು ಯಾರಿಗೆ ದೀರ್ಘಾಯುಷ್ಯ ನೀಡುತ್ತೇವೆಯೋ ಅವನ ಸೃಷ್ಟಿಯನ್ನು ನಾವು ತಿರುಗುಮುರುಗು ಮಾಡುತ್ತೇವೆ. ಆದರೂ ಅವರು ಅರ್ಥಮಾಡಿಕೊಳ್ಳುವುದಿಲ್ಲವೇ?

وَمَن نُّعَمِّرۡهُ نُنَكِّسۡهُ فِي ٱلۡخَلۡقِۚ أَفَلَا يَعۡقِلُونَ ﴿٦٨﴾

69. ನಾವು ಅವರಿಗೆ (ಪ್ರವಾದಿಗೆ) ಕಾವ್ಯವನ್ನು ಕಲಿಸಿಕೊಟ್ಟಿಲ್ಲ. ಅದು ಅವರಿಗೆ ಭೂಷಣವೂ ಅಲ್ಲ. ಇದು ಕೇವಲ ಒಂದು ಉಪದೇಶ ಮತ್ತು ಸ್ಪಷ್ಟ ಕುರ್‌ಆನ್ ಆಗಿದೆ.

وَمَا عَلَّمۡنَٰهُ ٱلشِّعۡرَ وَمَا يَنۢبَغِي لَهُۥٓۚ إِنۡ هُوَ إِلَّا ذِكۡرٞ وَقُرۡءَانٞ مُّبِينٞ ٦٩

70. ಇದು ಜೀವಂತವಿರುವವರಿಗೆ ಎಚ್ಚರಿಕೆ ನೀಡುವುದಕ್ಕಾಗಿ ಮತ್ತು ಸತ್ಯನಿಷೇಧಿಗಳ ಮೇಲೆ (ಶಿಕ್ಷೆಯ) ವಚನವು ಖಾತ್ರಿಯಾಗುವುದಕ್ಕಾಗಿದೆ.

لِّيُنذِرَ مَن كَانَ حَيّٗا وَيَحِقَّ ٱلۡقَوۡلُ عَلَى ٱلۡكَٰفِرِينَ ٧٠

71. ನಮ್ಮ ಕೈಗಳು ನಿರ್ಮಿಸಿದ ವಸ್ತುಗಳಲ್ಲಿ ಸೇರಿದ ಜಾನುವಾರುಗಳನ್ನು ನಾವು ಅವರಿಗೋಸ್ಕರ ಸೃಷ್ಟಿಸಿದ್ದೇವೆಂದು ಅವರು ನೋಡಿಲ್ಲವೇ? ಅವರು ಅವುಗಳ ಮಾಲಿಕರಾಗಿದ್ದಾರೆ.

أَوَلَمۡ يَرَوۡاْ أَنَّا خَلَقۡنَا لَهُم مِّمَّا عَمِلَتۡ أَيۡدِينَآ أَنۡعَٰمٗا فَهُمۡ لَهَا مَٰلِكُونَ ٧١

72. ನಾವು ಅವುಗಳನ್ನು ಅವರಿಗೆ ಪಳಗಿಸಿಕೊಟ್ಟಿದ್ದೇವೆ. ಅವುಗಳಲ್ಲಿ ಕೆಲವು ಪ್ರಾಣಿಗಳ ಮೇಲೆ ಅವರ ಸವಾರಿ ಮಾಡುತ್ತಾರೆ ಮತ್ತು ಕೆಲವು ಪ್ರಾಣಿಗಳ ಮಾಂಸವನ್ನು ತಿನ್ನುತ್ತಾರೆ.

وَذَلَّلۡنَٰهَا لَهُمۡ فَمِنۡهَا رَكُوبُهُمۡ وَمِنۡهَا يَأۡكُلُونَ ٧٢

73. ಅವುಗಳಲ್ಲಿ ಅವರಿಗೆ ಅನೇಕ ಪ್ರಯೋಜನಗಳಿವೆ; ಪಾನೀಯವೂ ಇದೆ. ಆದರೂ ಅವರು ಕೃತಜ್ಞರಾಗುವುದಿಲ್ಲವೇ?

وَلَهُمۡ فِيهَا مَنَٰفِعُ وَمَشَارِبُۚ أَفَلَا يَشۡكُرُونَ ٧٣

74. ಅವರು ಅಲ್ಲಾಹನನ್ನು ಬಿಟ್ಟು ಬೇರೆ ದೇವರುಗಳನ್ನು ಸ್ವೀಕರಿಸಿದ್ದಾರೆ. ಆ ದೇವರುಗಳು ಅವರಿಗೆ ಸಹಾಯ ಮಾಡುವುದಕ್ಕಾಗಿ.

وَٱتَّخَذُواْ مِن دُونِ ٱللَّهِ ءَالِهَةٗ لَّعَلَّهُمۡ يُنصَرُونَ ٧٤

75. ಆದರೆ ಅವರಿಗೆ ಸಹಾಯ ಮಾಡಲು ಆ ದೇವರುಗಳಿಗೆ ಸಾಧ್ಯವಿಲ್ಲ. (ಆದರೂ) ಅವರು ಆ ದೇವರುಗಳಿಗಿರುವ ಸನ್ನದ್ಧ ಸೈನ್ಯವಾಗಿ ಬಿಟ್ಟಿದ್ದಾರೆ.

لَا يَسۡتَطِيعُونَ نَصۡرَهُمۡ وَهُمۡ لَهُمۡ جُندٞ مُّحۡضَرُونَ ٧٥

76. ಆದ್ದರಿಂದ ಅವರು ಹೇಳುವ ಮಾತುಗಳು ನಿಮ್ಮನ್ನು ಬೇಸರಗೊ-ಳಿಸದಿರಲಿ. ಅವರು ರಹಸ್ಯವಾಗಿಡುವುದನ್ನು ಮತ್ತು ಬಹಿರಂಗಪ-ಡಿಸುವುದನ್ನು ನಾವು ಖಂಡಿತ ತಿಳಿಯುತ್ತೇವೆ.

فَلَا يَحۡزُنكَ قَوۡلُهُمۡۘ إِنَّا نَعۡلَمُ مَا يُسِرُّونَ وَمَا يُعۡلِنُونَ ٧٦

77. ಮನುಷ್ಯನು ನೋಡಿಲ್ಲವೇ? ನಾವು ಅವನನ್ನು ಒಂದು ವೀರ್ಯದಿಂದ ಸೃಷ್ಟಿಸಿದ್ದೇವೆಂದು? ನಂತರ ಇದ್ದಕ್ಕಿದ್ದಂತೆ ಅವನು ಸ್ಪಷ್ಟ ಎದುರಾಳಿಯಾಗಿ ಬಿಟ್ಟಿದ್ದಾನೆ.

أَوَلَمۡ يَرَ ٱلۡإِنسَٰنُ أَنَّا خَلَقۡنَٰهُ مِن نُّطۡفَةٖ فَإِذَا هُوَ خَصِيمٞ مُّبِينٞ ٧٧

78. ಅವನು ನಮಗೆ ಒಂದು ಉದಾಹರಣೆಯನ್ನು ತಿಳಿಸುತ್ತಾನೆ. ಆದರೆ ಸ್ವತಃ ತನ್ನ ಸೃಷ್ಟಿಯನ್ನೇ ಅವನು ಮರೆತು ಬಿಟ್ಟಿದ್ದಾನೆ. ಅವನು ಕೇಳುತ್ತಾನೆ: "ಕೊಳೆತ ಮೂಳೆಗಳಿಗೆ ಜೀವ ನೀಡುವುದು ಯಾರು?"

وَضَرَبَ لَنَا مَثَلٗا وَنَسِيَ خَلۡقَهُۥۖ قَالَ مَن يُحۡيِ ٱلۡعِظَٰمَ وَهِيَ رَمِيمٞ ٧٨

| | | |
|---|---|---|
| 79. | ಹೇಳಿರಿ: “ಅದನ್ನು ಪ್ರಥಮ ಬಾರಿ ಸೃಷ್ಟಿಸಿದವನೇ ಅದಕ್ಕೆ ಜೀವವನ್ನು ನೀಡುತ್ತಾನೆ. ಅವನು ಎಲ್ಲಾ ಸೃಷ್ಟಿಗಳ ಬಗ್ಗೆ ಸ್ಪಷ್ಟ ಜ್ಞಾನವುಳ್ಳವನಾಗಿದ್ದಾನೆ.” | قُلْ يُحْيِيهَا ٱلَّذِىٓ أَنشَأَهَآ أَوَّلَ مَرَّةٍ ۖ وَهُوَ بِكُلِّ خَلْقٍ عَلِيمٌ ﴿٧٩﴾ |
| 80. | ಅವನು ಯಾರೆಂದರೆ, ನಿಮಗೆ ಹಸಿರು ಮರದಿಂದ ಬೆಂಕಿಯನ್ನು ನಿರ್ಮಿಸಿ ಕೊಟ್ಟವನು. ಆಗ ಅಗೋ! ನೀವು ಅದರಿಂದ ಬೆಂಕಿ ಉರಿಸುತ್ತೀರಿ. | ٱلَّذِى جَعَلَ لَكُم مِّنَ ٱلشَّجَرِ ٱلْأَخْضَرِ نَارًا فَإِذَآ أَنتُم مِّنْهُ تُوقِدُونَ ﴿٨٠﴾ |
| 81. | ಭೂಮ್ಯಾಕಾಶಗಳನ್ನು ಸೃಷ್ಟಿಸಿದವನಿಗೆ ಅವರಂತಿರುವ ಮನುಷ್ಯರನ್ನು ಸೃಷ್ಟಿಸುವ ಸಾಮರ್ಥ್ಯವಿಲ್ಲವೇ? ಹೌದು (ಖಂಡಿತ ಸಾಮರ್ಥ್ಯವಿದೆ)! ಅವನು ಎಲ್ಲವನ್ನು ಸೃಷ್ಟಿಸುವವನು ಮತ್ತು ಸರ್ವಜ್ಞನಾಗಿದ್ದಾನೆ. | أَوَلَيْسَ ٱلَّذِى خَلَقَ ٱلسَّمَٰوَٰتِ وَٱلْأَرْضَ بِقَٰدِرٍ عَلَىٰٓ أَن يَخْلُقَ مِثْلَهُم ۚ بَلَىٰ وَهُوَ ٱلْخَلَّٰقُ ٱلْعَلِيمُ ﴿٨١﴾ |
| 82. | ಅವನು ಯಾವುದೇ ವಸ್ತುವನ್ನು ಬಯಸಿದರೆ, ಅದಕ್ಕೆ “ಉಂಟಾಗು” ಎಂಬ ಆಜ್ಞೆಯನ್ನು ಮಾತ್ರ ನೀಡುತ್ತಾನೆ. ತಕ್ಷಣ ಅದು ಉಂಟಾಗುತ್ತದೆ! | إِنَّمَآ أَمْرُهُۥٓ إِذَآ أَرَادَ شَيْـًٔا أَن يَقُولَ لَهُۥ كُن فَيَكُونُ ﴿٨٢﴾ |
| 83. | ಎಲ್ಲ ವಸ್ತುಗಳ ಸಾರ್ವಭೌಮತ್ವವು ಯಾರ ಕೈಯ್ಯಲ್ಲಿದೆಯೋ ಅವನು ಪರಮ ಪರಿಶುದ್ಧನು. ನಿಮ್ಮನ್ನು ಅವನ ಬಳಿಗೇ ಮರಳಿಸಲಾಗುವುದು. | فَسُبْحَٰنَ ٱلَّذِى بِيَدِهِۦ مَلَكُوتُ كُلِّ شَىْءٍ وَإِلَيْهِ تُرْجَعُونَ ﴿٨٣﴾ |

## 37. ಅಸ್ಸಾಫ್ಫಾತ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ — بِسْمِ ٱللَّهِ ٱلرَّحْمَٰنِ ٱلرَّحِيمِ

| | | |
|---|---|---|
| 1. | ಸಾಲುಗಟ್ಟಿ ನಿಂತ ದೇವದೂತರುಗಳ ಮೇಲಾಣೆ! | وَٱلصَّٰٓفَّٰتِ صَفًّا ﴿١﴾ |
| 2. | ತೀಕ್ಷ್ಣವಾಗಿ ಗದರಿಸುವವರ ಮೇಲಾಣೆ! | فَٱلزَّٰجِرَٰتِ زَجْرًا ﴿٢﴾ |
| 3. | ಉಪದೇಶವನ್ನು ಪಠಿಸುವವರ ಮೇಲಾಣೆ! | فَٱلتَّٰلِيَٰتِ ذِكْرًا ﴿٣﴾ |
| 4. | ಖಂಡಿತವಾಗಿಯೂ ನಿಮ್ಮ ದೇವನು ಏಕೈಕನಾಗಿದ್ದಾನೆ. | إِنَّ إِلَٰهَكُمْ لَوَٰحِدٌ ﴿٤﴾ |
| 5. | ಅವನು ಭೂಮ್ಯಾಕಾಶಗಳ ಮತ್ತು ಅವುಗಳ ನಡುವೆಯಿರುವ ಎಲ್ಲಾ ವಸ್ತುಗಳ ಪರಿಪಾಲಕ ಹಾಗೂ ಉದಯ ಸ್ಥಾನಗಳ ಪರಿಪಾಲಕನಾಗಿದ್ದಾನೆ. | رَّبُّ ٱلسَّمَٰوَٰتِ وَٱلْأَرْضِ وَمَا بَيْنَهُمَا وَرَبُّ ٱلْمَشَٰرِقِ ﴿٥﴾ |
| 6. | ನಿಶ್ಚಯವಾಗಿಯೂ ನಾವು ಸಮೀಪದ ಆಕಾಶವನ್ನು ನಕ್ಷತ್ರಗಳ ಶೃಂಗಾರದಿಂದ ಅಲಂಕರಿಸಿದ್ದೇವೆ. | إِنَّا زَيَّنَّا ٱلسَّمَآءَ ٱلدُّنْيَا بِزِينَةٍ ٱلْكَوَاكِبِ ﴿٦﴾ |

| | | |
|---|---|---|
| 7. | ವಿದ್ರೋಹಿಗಳಾದ ಎಲ್ಲಾ ಶೈತಾನರಿಂದ ನಾವು ಅದನ್ನು ಭದ್ರಪಡಿಸಿದ್ದೇವೆ. | وَحِفۡظٗا مِّن كُلِّ شَيۡطَٰنٖ مَّارِدٖ ٧ |
| 8. | ಉಪರಿಲೋಕದ ದೇವದೂತರುಗಳ ಮಾತುಗಳಿಗೆ ಕಿವಿಗೊಡಲು ಅವರಿಗೆ ಸಾಧ್ಯವಾಗುವುದಿಲ್ಲ. ಎಲ್ಲಾ ದಿಕ್ಕುಗಳಿಂದಲೂ ಅವರಿಗೆ ಎಸೆಯಲಾಗುತ್ತದೆ. | لَّا يَسَّمَّعُونَ إِلَى ٱلۡمَلَإِ ٱلۡأَعۡلَىٰ وَيُقۡذَفُونَ مِن كُلِّ جَانِبٖ ٨ |
| 9. | ಅವರನ್ನು ಓಡಿಸುವುದಕ್ಕಾಗಿ. ಅವರಿಗೆ ಶಾಶ್ವತ ಶಿಕ್ಷೆಯೂ ಇದೆ. | دُحُورٗاۖ وَلَهُمۡ عَذَابٞ وَاصِبٌ ٩ |
| 10. | ಆದರೆ, ಅವರಲ್ಲಿ ಯಾರಾದರೂ (ದೇವದೂತರ) ಮಾತನ್ನು ಕದ್ದು ಕೇಳಿ ಓಡಿದರೆ, (ತಕ್ಷಣ) ಜ್ವಲಿಸುವ ಒಂದು ಜ್ವಾಲೆಯು ಅವನನ್ನು ಹಿಂಬಾಲಿಸುತ್ತದೆ. | إِلَّا مَنۡ خَطِفَ ٱلۡخَطۡفَةَ فَأَتۡبَعَهُۥ شِهَابٞ ثَاقِبٞ ١٠ |
| 11. | (ಪ್ರವಾದಿಯವರೇ) ಅವರೊಡನೆ ಕೇಳಿರಿ: "ಅವರನ್ನು ಸೃಷ್ಟಿಸುವುದು ಕಷ್ಟವೋ? ಅಥವಾ ನಾವು ಸೃಷ್ಟಿಸಿದ ಇತರ ಸೃಷ್ಟಿಗಳನ್ನೋ?" ನಿಶ್ಚಯವಾಗಿಯೂ ನಾವು ಅವರನ್ನು ಅಂಟಿಕೊಳ್ಳುವ ಜೇಡಿಮಣ್ಣಿನಿಂದ ಸೃಷ್ಟಿಸಿದ್ದೇವೆ. | فَٱسۡتَفۡتِهِمۡ أَهُمۡ أَشَدُّ خَلۡقًا أَم مَّنۡ خَلَقۡنَآۚ إِنَّا خَلَقۡنَٰهُم مِّن طِينٖ لَّازِبِۭ ١١ |
| 12. | ಅಲ್ಲ, ನಿಮಗೆ ಅಚ್ಚರಿಯಾಗುತ್ತದೆ.[1] ಆದರೆ ಅವರು ತಮಾಷೆ ಮಾಡುತ್ತಾರೆ! | بَلۡ عَجِبۡتَ وَيَسۡخَرُونَ ١٢ |
| 13. | ಅವರಿಗೆ ಉಪದೇಶ ನೀಡಲಾದರೆ ಅವರು ಅದನ್ನು ಸ್ವೀಕರಿಸುವುದಿಲ್ಲ. | وَإِذَا ذُكِّرُواْ لَا يَذۡكُرُونَ ١٣ |
| 14. | ಅವರು ಯಾವುದಾದರೂ ದೃಷ್ಟಾಂತವನ್ನು ಕಂಡರೆ ಲೇವಡಿ ಮಾಡುತ್ತಾರೆ. | وَإِذَا رَأَوۡاْ ءَايَةٗ يَسۡتَسۡخِرُونَ ١٤ |
| 15. | ಅವರು ಹೇಳುತ್ತಾರೆ: "ಇದು ಸ್ಪಷ್ಟ ಮಾಟಗಾರಿಕೆಯಲ್ಲದೆ ಇನ್ನೇನಲ್ಲ. | وَقَالُوٓاْ إِنۡ هَٰذَآ إِلَّا سِحۡرٞ مُّبِينٌ ١٥ |
| 16. | ನಾವು ಸತ್ತು ಮಣ್ಣು ಮತ್ತು ಮೂಳೆಗಳಾಗಿ ಬಿಟ್ಟ ಬಳಿಕ ನಮ್ಮನ್ನು ಪುನಃ ಜೀವ ನೀಡಿ ಎಬ್ಬಿಸಲಾಗುವುದೇ? | أَءِذَا مِتۡنَا وَكُنَّا تُرَابٗا وَعِظَٰمًا أَءِنَّا لَمَبۡعُوثُونَ ١٦ |
| 17. | ಮತ್ತು ನಮ್ಮ ಪೂರ್ವಜರನ್ನು ಕೂಡ?" | أَوَءَابَآؤُنَا ٱلۡأَوَّلُونَ ١٧ |
| 18. | ಹೇಳಿರಿ: "ಹೌದು! ನೀವು ಅವಮಾನಿತರಾಗುವಿರಿ." | قُلۡ نَعَمۡ وَأَنتُمۡ دَٰخِرُونَ ١٨ |
| 19. | ಅದು ಒಂದು ತೀಕ್ಷ್ಣ ಗದರಿಕೆ ಮಾತ್ರವಾಗಿರುವುದು. ಆಗ ಅಗೋ! ಅವರು ನೋಡ ತೊಡಗುವರು. | فَإِنَّمَا هِيَ زَجۡرَةٞ وَٰحِدَةٞ فَإِذَا هُمۡ يَنظُرُونَ ١٩ |
| 20. | ಅವರು ಹೇಳುವರು: "ಅಯ್ಯೋ! ನಮ್ಮ ದುರ್ಗತಿಯೇ! ಇದು ಪ್ರತಿಫಲದ ದಿನ!" | وَقَالُواْ يَٰوَيۡلَنَا هَٰذَا يَوۡمُ ٱلدِّينِ ٢٠ |

[1] ಅವರು ಪರಲೋಕವನ್ನು ನಿಷೇಧಿಸುವುದನ್ನು ಕಾಣುವಾಗ ನಿಮಗೆ ಅಚ್ಚರಿಯಾಗುತ್ತದೆ.

| | | |
|---|---|---|
| 21. | ಇದು ನೀವು ನಿಷೇಧಿಸುತ್ತಿದ್ದ ಅಂತಿಮ ತೀರ್ಪು ನೀಡುವ ದಿನವಾಗಿದೆ. | هَٰذَا يَوۡمُ ٱلۡفَصۡلِ ٱلَّذِي كُنتُم بِهِۦ تُكَذِّبُونَ ٢١ |
| 22. | (ಅಲ್ಲಾಹು ಆದೇಶಿಸುವನು): "ಅಕ್ರಮವೆಸಗಿದವರನ್ನು, ಅವರ ಸಹಚರರನ್ನು ಮತ್ತು ಅವರು ಆರಾಧಿಸುತ್ತಿದ್ದವುಗಳನ್ನು ಒಟ್ಟುಗೂಡಿಸಿರಿ. | ٱحۡشُرُواْ ٱلَّذِينَ ظَلَمُواْ وَأَزۡوَٰجَهُمۡ وَمَا كَانُواْ يَعۡبُدُونَ ٢٢ |
| 23. | ಅಲ್ಲಾಹನನ್ನು ಬಿಟ್ಟು (ಆರಾಧಿಸುತ್ತಿದ್ದವುಗಳನ್ನು). ಅವರೆಲ್ಲರಿಗೂ ನರಕದ ದಾರಿಯನ್ನು ತೋರಿಸಿ. | مِن دُونِ ٱللَّهِ فَٱهۡدُوهُمۡ إِلَىٰ صِرَٰطِ ٱلۡجَحِيمِ ٢٣ |
| 24. | ಅವರನ್ನು ನಿಲ್ಲಿಸಿ! ಅವರೊಡನೆ ಪ್ರಶ್ನಿಸಬೇಕಾಗಿದೆ." | وَقِفُوهُمۡۖ إِنَّهُم مَّسۡـُٔولُونَ ٢٤ |
| 25. | (ಅವರೊಡನೆ ಕೇಳಲಾಗುವುದು): "ನಿಮಗೇನಾಗಿದೆ? ನೀವೇಕೆ ಪರಸ್ಪರ ಸಹಾಯ ಮಾಡುವುದಿಲ್ಲ?" | مَا لَكُمۡ لَا تَنَاصَرُونَ ٢٥ |
| 26. | ಅಲ್ಲ, ವಾಸ್ತವವಾಗಿ ಇಂದು ಅವರು (ಸಂಪೂರ್ಣ) ಶರಣಾಗಿದ್ದಾರೆ. | بَلۡ هُمُ ٱلۡيَوۡمَ مُسۡتَسۡلِمُونَ ٢٦ |
| 27. | ಅವರಲ್ಲಿ ಒಬ್ಬರು ಇನ್ನೊಬ್ಬರ ಕಡೆಗೆ ತಿರುಗಿ ಪ್ರಶ್ನಿಸುವರು. | وَأَقۡبَلَ بَعۡضُهُمۡ عَلَىٰ بَعۡضٖ يَتَسَآءَلُونَ ٢٧ |
| 28. | ಅವರು ಹೇಳುವರು: "ನಿಶ್ಚಯವಾಗಿಯೂ ನೀವು ನಮ್ಮ ಬಲಭಾಗದಿಂದ ನಮ್ಮ ಬಳಿಗೆ ಬರುತ್ತಿದ್ದಿರಿ." | قَالُوٓاْ إِنَّكُمۡ كُنتُمۡ تَأۡتُونَنَا عَنِ ٱلۡيَمِينِ ٢٨ |
| 29. | ಅವರು ಉತ್ತರಿಸುವರು: "ಅಲ್ಲ, ನೀವು ಸತ್ಯವಿಶ್ವಾಸಿಗಳಾಗಿರಲಿಲ್ಲ. | قَالُواْ بَل لَّمۡ تَكُونُواْ مُؤۡمِنِينَ ٢٩ |
| 30. | ನಮಗೆ ನಿಮ್ಮ ಮೇಲೆ ಯಾವುದೇ ಅಧಿಕಾರವಿರಲಿಲ್ಲ. ಬದಲಿಗೆ, ನೀವು ಅತಿರೇಕಿಗಳಾದ ಜನರಾಗಿದ್ದಿರಿ. | وَمَا كَانَ لَنَا عَلَيۡكُم مِّن سُلۡطَٰنِۭۖ بَلۡ كُنتُمۡ قَوۡمٗا طَٰغِينَ ٣٠ |
| 31. | ಆದ್ದರಿಂದ ನಮ್ಮ ಪರಿಪಾಲಕನ (ಅಲ್ಲಾಹನ) ವಚನವು ನಮ್ಮ ಮೇಲೆ ಖಾತ್ರಿಯಾಯಿತು. ನಿಶ್ಚಯವಾಗಿಯೂ ನಾವು ಶಿಕ್ಷೆಯ ರುಚಿಯನ್ನು ನೋಡುವೆವು. | فَحَقَّ عَلَيۡنَا قَوۡلُ رَبِّنَآۖ إِنَّا لَذَآئِقُونَ ٣١ |
| 32. | ನಾವು ನಿಮ್ಮನ್ನು ದಾರಿತಪ್ಪಿಸಿದೆವು. (ಏಕೆಂದರೆ) ನಾವು ಸ್ವತಃ ದಾರಿತಪ್ಪಿದ್ದೆವು." | فَأَغۡوَيۡنَٰكُمۡ إِنَّا كُنَّا غَٰوِينَ ٣٢ |
| 33. | ಆದ್ದರಿಂದ ಆ ದಿನದಂದು ಅವರೆಲ್ಲರೂ ಶಿಕ್ಷೆಯಲ್ಲಿ ಪಾಲುದಾರರಾಗುವರು. | فَإِنَّهُمۡ يَوۡمَئِذٖ فِي ٱلۡعَذَابِ مُشۡتَرِكُونَ ٣٣ |
| 34. | ನಿಶ್ಚಯವಾಗಿಯೂ ನಾವು ಅಪರಾಧಿಗಳೊಡನೆ ಹೀಗೆಯೇ ವರ್ತಿಸುವೆವು. | إِنَّا كَذَٰلِكَ نَفۡعَلُ بِٱلۡمُجۡرِمِينَ ٣٤ |
| 35. | ಅವರೊಡನೆ, "ಅಲ್ಲಾಹನ ಹೊರತು ಆರಾಧನೆಗೆ ಅರ್ಹರಾದ | إِنَّهُمۡ كَانُوٓاْ إِذَا قِيلَ لَهُمۡ لَآ إِلَٰهَ إِلَّا ٱللَّهُ |

| | |
|---|---|
| ಬೇರೆ ದೇವರಿಲ್ಲ” ಎಂದು ಹೇಳಲಾದರೆ ಅವರು ಅಹಂಕಾರ ತೋರುತ್ತಿದ್ದರು. | يَسۡتَكۡبِرُونَ ﴿٣٥﴾ |
| 36. ಅವರು ಹೇಳುತ್ತಿದ್ದರು: “ಒಬ್ಬ ಮಾನಸಿಕ ಅಸ್ವಸ್ಥ ಕವಿಯ ಮಾತು ಕೇಳಿ ನಾವು ನಮ್ಮ ದೇವರುಗಳನ್ನು ಬಿಟ್ಟುಬಿಡಬೇಕೇ?” | وَيَقُولُونَ أَئِنَّا لَتَارِكُوٓاْ ءَالِهَتِنَا لِشَاعِرٖ مَّجۡنُونِۭ ﴿٣٦﴾ |
| 37. ಅಲ್ಲ, ವಾಸ್ತವವಾಗಿ ಅವರು (ಪ್ರವಾದಿ) ಸತ್ಯದೊಂದಿಗೆ ಬಂದಿದ್ದರು ಮತ್ತು ಅವರು (ಮೊದಲಿನ) ಪ್ರವಾದಿಗಳನ್ನು ದೃಢೀಕರಿಸಿದ್ದರು. | بَلۡ جَآءَ بِٱلۡحَقِّ وَصَدَّقَ ٱلۡمُرۡسَلِينَ ﴿٣٧﴾ |
| 38. ನಿಶ್ಚಯವಾಗಿಯೂ ನೀವು ಯಾತನಾಮಯ ಶಿಕ್ಷೆಯ ರುಚಿಯನ್ನು ನೋಡುವಿರಿ. | إِنَّكُمۡ لَذَآئِقُواْ ٱلۡعَذَابِ ٱلۡأَلِيمِ ﴿٣٨﴾ |
| 39. ನೀವು ಮಾಡಿದ ಕರ್ಮಗಳ ಪ್ರತಿಫಲವನ್ನೇ ಹೊರತು ಬೇರೇನೂ ನಿಮಗೆ ನೀಡಲಾಗುವುದಿಲ್ಲ. | وَمَا تُجۡزَوۡنَ إِلَّا مَا كُنتُمۡ تَعۡمَلُونَ ﴿٣٩﴾ |
| 40. ಆದರೆ, ಅಲ್ಲಾಹನ ನಿಷ್ಕಳಂಕ ದಾಸರು ಇದರಿಂದ ಹೊರತಾಗಿದ್ದಾರೆ. | إِلَّا عِبَادَ ٱللَّهِ ٱلۡمُخۡلَصِينَ ﴿٤٠﴾ |
| 41. ಅವರಿಗೆ ನಿಶ್ಚಿತ ಉಪಜೀವನವಿದೆ. | أُوْلَٰٓئِكَ لَهُمۡ رِزۡقٞ مَّعۡلُومٞ ﴿٤١﴾ |
| 42. ಹಣ್ಣು-ಹಂಪಲುಗಳಿವೆ! ಅವರನ್ನು ಅಲ್ಲಿ ಗೌರವಿಸಲಾಗುವುದು. | فَوَٰكِهُ وَهُم مُّكۡرَمُونَ ﴿٤٢﴾ |
| 43. ಸುಖಸಮೃದ್ಧವಾದ ಸ್ವರ್ಗೋದ್ಯಾನಗಳಲ್ಲಿ. | فِي جَنَّٰتِ ٱلنَّعِيمِ ﴿٤٣﴾ |
| 44. ಅವರು ಪರಸ್ಪರ ಎದುರು-ಬದುರಾಗಿ ಮಂಚಗಳಲ್ಲಿ ಕುಳಿತಿರುವರು. | عَلَىٰ سُرُرٖ مُّتَقَٰبِلِينَ ﴿٤٤﴾ |
| 45. ಹರಿಯುವ ಚಿಲುಮೆಯ ನೀರು ತುಂಬಿದ ಲೋಟಗಳನ್ನು ಅವರ ಸುತ್ತಲೂ ತರಲಾಗುವುದು. | يُطَافُ عَلَيۡهِم بِكَأۡسٖ مِّن مَّعِينِۭ ﴿٤٥﴾ |
| 46. ಅದು ಬೆಳ್ಳಗಿದ್ದು ಕುಡಿಯುವವರಿಗೆ ಆಹ್ಲಾದಕರವಾಗಿರುವುದು. | بَيۡضَآءَ لَذَّةٖ لِّلشَّٰرِبِينَ ﴿٤٦﴾ |
| 47. ಅದರಲ್ಲಿ ಯಾವುದೇ ಅಡ್ಡ ಪರಿಣಾಮವಿಲ್ಲ. ಅದರಿಂದ ನಶೆಯೂ ಉಂಟಾಗುವುದಿಲ್ಲ. | لَا فِيهَا غَوۡلٞ وَلَا هُمۡ عَنۡهَا يُنزَفُونَ ﴿٤٧﴾ |
| 48. ದೃಷ್ಟಿಯನ್ನು ನಿಯಂತ್ರಿಸುವ[1] ಮತ್ತು ಅರಳಿದ ನೇತ್ರಗಳುಳ್ಳ ಅಪ್ಸರೆಯರು ಅವರ ಬಳಿಯಿರುವರು. | وَعِندَهُمۡ قَٰصِرَٰتُ ٱلطَّرۡفِ عِينٞ ﴿٤٨﴾ |
| 49. ಅವರು ಜೋಪಾನವಾಗಿಡಲಾದ ಮೊಟ್ಟೆಗಳಂತೆ ಇರುವರು. | كَأَنَّهُنَّ بَيۡضٞ مَّكۡنُونٞ ﴿٤٩﴾ |
| 50. ಅವರು ಪರಸ್ಪರ ಒಬ್ಬರು ಇನ್ನೊಬ್ಬರ ಕಡೆಗೆ ತಿರುಗಿ ಪ್ರಶ್ನಿಸುವರು. | فَأَقۡبَلَ بَعۡضُهُمۡ عَلَىٰ بَعۡضٖ يَتَسَآءَلُونَ ﴿٥٠﴾ |

[1] ಅಂದರೆ ಅವರು ಅತ್ಯಂತ ಪರಿಶುದ್ಧ ಮತ್ತು ಸಭ್ಯರಾಗಿದ್ದು ತಮ್ಮ ಗಂಡಂದಿರ ಹೊರತು ಬೇರೆ ಯಾರ ಕಡೆಗೂ ದೃಷ್ಟಿ ಹಾಯಿಸುವುದಿಲ್ಲ.

| | | |
|---|---|---|
| 51. | ಅವರಲ್ಲಿ ಒಬ್ಬನು ಹೇಳುವನು: "ನಿಜಕ್ಕೂ ನನಗೊಬ್ಬ ಗೆಳೆಯನಿದ್ದನು. | قَالَ قَآئِلٞ مِّنۡهُمۡ إِنِّي كَانَ لِي قَرِينٞ ٥١ |
| 52. | ಅವನು ಕೇಳುತ್ತಿದ್ದನು: ನೀನು (ಪರಲೋಕದಲ್ಲಿ) ವಿಶ್ವಾಸವಿಡುತ್ತೀಯಾ? | يَقُولُ أَءِنَّكَ لَمِنَ ٱلۡمُصَدِّقِينَ ٥٢ |
| 53. | ನಾವು ಸತ್ತು ಮಣ್ಣು ಮತ್ತು ಮೂಳೆಗಳಾಗಿ ಬಿಟ್ಟ ಬಳಿಕವೂ ನಮಗೆ ನಮ್ಮ ಕರ್ಮಫಲಗಳನ್ನು ನೀಡಲಾಗುತ್ತದೆಯೇ?" | أَءِذَا مِتۡنَا وَكُنَّا تُرَابٗا وَعِظَٰمًا أَءِنَّا لَمَدِينُونَ ٥٣ |
| 54. | ಅವನು (ತನ್ನ ಬಳಿಯಿರುವವರೊಡನೆ) ಕೇಳುವನು: "ನೀವು ಅವನನ್ನು ನೋಡಲು ಬಯಸುತ್ತೀರಾ?" | قَالَ هَلۡ أَنتُم مُّطَّلِعُونَ ٥٤ |
| 55. | ಆಗ ಅವನು ಇಣುಕಿ ನೋಡಿದಾಗ ಆತ ನರಕದ ಮಧ್ಯಭಾಗದಲ್ಲಿರುವುದನ್ನು ಕಾಣುವನು. | فَٱطَّلَعَ فَرَءَاهُ فِي سَوَآءِ ٱلۡجَحِيمِ ٥٥ |
| 56. | ಅವನು ಹೇಳುವನು: "ಅಲ್ಲಾಹನಾಣೆ! ನೀನು ನನ್ನನ್ನು ಇನ್ನೇನು ನಾಶ ಮಾಡಿಯೇ ಬಿಡುತ್ತಿದ್ದೆ. | قَالَ تَٱللَّهِ إِن كِدتَّ لَتُرۡدِينِ ٥٦ |
| 57. | ನನ್ನ ಪರಿಪಾಲಕನ (ಅಲ್ಲಾಹನ) ಅನುಗ್ರಹವಿಲ್ಲದಿರುತ್ತಿದ್ದರೆ, ನಾನು ಕೂಡ (ನರಕಕ್ಕೆ) ಹಾಜರುಪಡಿಸಲಾಗುವವರಲ್ಲಿ ಸೇರಿರುತ್ತಿದ್ದೆ." | وَلَوۡلَا نِعۡمَةُ رَبِّي لَكُنتُ مِنَ ٱلۡمُحۡضَرِينَ ٥٧ |
| 58. | (ಸ್ವರ್ಗವಾಸಿಗಳು ಹೇಳುವರು): "ಇನ್ನು ನಾವು ಸಾಯುವುದಿಲ್ಲ. | أَفَمَا نَحۡنُ بِمَيِّتِينَ ٥٨ |
| 59. | ನಮ್ಮ ಮೊದಲ ಸಾವಿನ ಹೊರತು. ಇನ್ನು ನಮಗೆ ಶಿಕ್ಷೆಯೂ ಇಲ್ಲ." | إِلَّا مَوۡتَتَنَا ٱلۡأُولَىٰ وَمَا نَحۡنُ بِمُعَذَّبِينَ ٥٩ |
| 60. | ನಿಶ್ಚಯವಾಗಿಯೂ ಇದೇ ಮಹಾ ವಿಜಯ. | إِنَّ هَٰذَا لَهُوَ ٱلۡفَوۡزُ ٱلۡعَظِيمُ ٦٠ |
| 61. | ಕರ್ಮವೆಸಗುವವರು ಇಂತಹ (ವಿಜಯಕ್ಕಾಗಿಯೇ) ಕರ್ಮವೆಸಗಲಿ. | لِمِثۡلِ هَٰذَا فَلۡيَعۡمَلِ ٱلۡعَٰمِلُونَ ٦١ |
| 62. | ಈ ಆತಿಥ್ಯವು ಉತ್ತಮವೋ? ಅಥವಾ ಝಕ್ಕೂಮ್ ಮರವೋ?[1] | أَذَٰلِكَ خَيۡرٞ نُّزُلًا أَمۡ شَجَرَةُ ٱلزَّقُّومِ ٦٢ |
| 63. | ನಿಶ್ಚಯವಾಗಿಯೂ ನಾವು ಅದನ್ನು ಅಕ್ರಮಿಗಳಿಗೆ ಪರೀಕ್ಷೆಯಾಗಿ ಮಾಡಿದ್ದೇವೆ. | إِنَّا جَعَلۡنَٰهَا فِتۡنَةٗ لِّلظَّٰلِمِينَ ٦٣ |
| 64. | ಅದು ನರಕಾಗ್ನಿಯ ತಳಭಾಗದಿಂದ ಹೊರಹೊಮ್ಮುವ ಮರವಾಗಿದೆ. | إِنَّهَا شَجَرَةٞ تَخۡرُجُ فِيٓ أَصۡلِ ٱلۡجَحِيمِ ٦٤ |
| 65. | ಅದರ ಮೊಗ್ಗುಗಳು ಶೈತಾನರ ತಲೆ ಬುರುಡೆಗಳಂತಿವೆ. | طَلۡعُهَا كَأَنَّهُۥ رُءُوسُ ٱلشَّيَٰطِينِ ٦٥ |
| 66. | ನಿಶ್ಚಯವಾಗಿಯೂ ಅವರು ಅದರಿಂದ ತಿನ್ನುವರು ಮತ್ತು ಹೊಟ್ಟೆ ತುಂಬಿಸುವರು. | فَإِنَّهُمۡ لَأٓكِلُونَ مِنۡهَا فَمَالِـُٔونَ مِنۡهَا ٱلۡبُطُونَ ٦٦ |

[1] ಝಕ್ಕೂಮ್ ಎಂದರೆ ನರಕದಲ್ಲಿ ಬೆಳೆಯುವ ಮರ. ಇದರ ಹಣ್ಣು ಅತ್ಯಂತ ಕೆಟ್ಟ ವಾಸನೆಯನ್ನು ಹೊಂದಿದ್ದು ಅತ್ಯಂತ ಕಹಿಯೂ ಆಗಿದೆ.

| | |
|---|---|
| 67. ನಂತರ ಅವರಿಗೆ ಮಿಶ್ರಣಗೊಂಡ ಕುದಿಯುವ ಪಾನೀಯವನ್ನು ನೀಡಲಾಗುವುದು. | ثُمَّ إِنَّ لَهُمْ عَلَيْهَا لَشَوْبًا مِّنْ حَمِيمٍ ﴿٦٧﴾ |
| 68. ನಂತರ ಅವರೆಲ್ಲರೂ ಮರಳುವುದು ನರಕದ ಕಡೆಗಾಗಿದೆ. | ثُمَّ إِنَّ مَرْجِعَهُمْ لَإِلَى ٱلْجَحِيمِ ﴿٦٨﴾ |
| 69. ನಿಶ್ಚಯವಾಗಿಯೂ ಅವರು ತಮ್ಮ ಪೂರ್ವಜರನ್ನು ದಾರಿತಪ್ಪಿದ್ದಾಗಿ ಕಂಡಿದ್ದರು. | إِنَّهُمْ أَلْفَوْا۟ ءَابَآءَهُمْ ضَآلِّينَ ﴿٦٩﴾ |
| 70. ಇವರು ಅವರ ಹೆಜ್ಜೆಗಳನ್ನು (ಹಿಂಬಾಲಿಸಿ) ಧಾವಿಸುತ್ತಿದ್ದಾರೆ. | فَهُمْ عَلَىٰٓ ءَاثَٰرِهِمْ يُهْرَعُونَ ﴿٧٠﴾ |
| 71. ಇವರಿಗಿಂತ ಮೊದಲಿನ ಜನರಲ್ಲಿ ಹೆಚ್ಚಿನವರು ದಾರಿತಪ್ಪಿದ್ದರು. | وَلَقَدْ ضَلَّ قَبْلَهُمْ أَكْثَرُ ٱلْأَوَّلِينَ ﴿٧١﴾ |
| 72. ನಾವು ಅವರಿಗೆ ಮುನ್ನೆಚ್ಚರಿಕೆಗಾರರನ್ನು (ಪ್ರವಾದಿಗಳನ್ನು) ಕಳುಹಿಸಿದ್ದೆವು. | وَلَقَدْ أَرْسَلْنَا فِيهِم مُّنذِرِينَ ﴿٧٢﴾ |
| 73. ಮುನ್ನೆಚ್ಚರಿಕೆ ನೀಡಲಾದವರ ಅಂತ್ಯವು ಹೇಗಿತ್ತೆಂದು ನೋಡಿರಿ. | فَٱنظُرْ كَيْفَ كَانَ عَٰقِبَةُ ٱلْمُنذَرِينَ ﴿٧٣﴾ |
| 74. ಅಲ್ಲಾಹನ ನಿಷ್ಕಳಂಕ ದಾಸರು ಇದಕ್ಕೆ ಹೊರತಾಗಿದ್ದಾರೆ. | إِلَّا عِبَادَ ٱللَّهِ ٱلْمُخْلَصِينَ ﴿٧٤﴾ |
| 75. ನೂಹ್ ನಮ್ಮನ್ನು ಕರೆದು ಪ್ರಾರ್ಥಿಸಿದ್ದರು. ನಾವು ಪ್ರಾರ್ಥನೆಗೆ ಎಷ್ಟು ಚೆನ್ನಾಗಿ ಉತ್ತರಿಸುತ್ತೇವೆ. | وَلَقَدْ نَادَىٰنَا نُوحٌ فَلَنِعْمَ ٱلْمُجِيبُونَ ﴿٧٥﴾ |
| 76. ನಾವು ಅವರನ್ನು ಮತ್ತು ಅವರ ಜನರನ್ನು ಮಹಾ ದುರಂತದಿಂದ ಪಾರು ಮಾಡಿದೆವು. | وَنَجَّيْنَٰهُ وَأَهْلَهُۥ مِنَ ٱلْكَرْبِ ٱلْعَظِيمِ ﴿٧٦﴾ |
| 77. ನಾವು ಅವರ ಸಂತಾನವನ್ನು (ಭೂಮಿಯಲ್ಲಿ) ಅವಶೇಷಿಸಿದವರ-ನ್ನಾಗಿ ಮಾಡಿದೆವು. | وَجَعَلْنَا ذُرِّيَّتَهُۥ هُمُ ٱلْبَاقِينَ ﴿٧٧﴾ |
| 78. ನಾವು ನಂತರದ ತಲೆಮಾರುಗಳಲ್ಲಿ ಅವರ (ಉತ್ತಮ ಹೆಸರನ್ನು) ಉಳಿಸಿದೆವು. | وَتَرَكْنَا عَلَيْهِ فِى ٱلْءَاخِرِينَ ﴿٧٨﴾ |
| 79. ಸರ್ವಲೋಕದವರಲ್ಲಿ ನೂಹರ ಮೇಲೆ ಶಾಂತಿಯಿರಲಿ! | سَلَٰمٌ عَلَىٰ نُوحٍ فِى ٱلْعَٰلَمِينَ ﴿٧٩﴾ |
| 80. ನಿಶ್ಚಯವಾಗಿಯೂ ನಾವು ನೀತಿವಂತರಿಗೆ ಹೀಗೆಯೇ ಪ್ರತಿಫಲವನ್ನು ನೀಡುವೆವು. | إِنَّا كَذَٰلِكَ نَجْزِى ٱلْمُحْسِنِينَ ﴿٨٠﴾ |
| 81. ನಿಶ್ಚಯವಾಗಿಯೂ ಅವರು ನಮ್ಮ ಸತ್ಯವಿಶ್ವಾಸಿ ದಾಸರಲ್ಲಿ ಸೇರಿದ್ದಾರೆ. | إِنَّهُۥ مِنْ عِبَادِنَا ٱلْمُؤْمِنِينَ ﴿٨١﴾ |
| 82. ನಂತರ ನಾವು ಉಳಿದವರನ್ನು ಮುಳುಗಿಸಿದೆವು. | ثُمَّ أَغْرَقْنَا ٱلْءَاخَرِينَ ﴿٨٢﴾ |
| 83. ನಿಶ್ಚಯವಾಗಿಯೂ ಇಬ್ರಾಹೀಮ್ ಕೂಡ ಅವರ ಗುಂಪಿಗೆ ಸೇರಿದವರು. | وَإِنَّ مِن شِيعَتِهِۦ لَإِبْرَٰهِيمَ ﴿٨٣﴾ |

84. ಅವರು ಅವರ ಪರಿಪಾಲಕನ (ಅಲ್ಲಾಹನ) ಬಳಿಗೆ ಸುರಕ್ಷಿತ ಹೃದಯದೊಂದಿಗೆ ಬಂದ ಸಂದರ್ಭ! إِذْ جَآءَ رَبَّهُۥ بِقَلْبٍ سَلِيمٍ ﴿٨٤﴾

85. ಅವರು ತಮ್ಮ ತಂದೆ ಮತ್ತು ಊರ ಜನರೊಡನೆ ಕೇಳಿದರು: "ನೀವು ಏನು ಆರಾಧಿಸುತ್ತಿದ್ದೀರಿ? إِذْ قَالَ لِأَبِيهِ وَقَوْمِهِۦ مَاذَا تَعْبُدُونَ ﴿٨٥﴾

86. ನೀವು ಅಲ್ಲಾಹನನ್ನು ಬಿಟ್ಟು ಮಿಥ್ಯ ದೇವರುಗಳನ್ನು ಬಯಸುತ್ತೀರಾ? أَئِفْكًا ءَالِهَةً دُونَ ٱللَّهِ تُرِيدُونَ ﴿٨٦﴾

87. ಸರ್ವಲೋಕಗಳ ಪರಿಪಾಲಕನ (ಅಲ್ಲಾಹನ) ಬಗ್ಗೆ ನಿಮ್ಮ ಕಲ್ಪನೆಯೇನು?" فَمَا ظَنُّكُم بِرَبِّ ٱلْعَٰلَمِينَ ﴿٨٧﴾

88. ನಂತರ ಅವರು ನಕ್ಷತ್ರಗಳ ಕಡೆಗೆ ಒಂದು ನೋಟವನ್ನು ಬೀರಿದರು. فَنَظَرَ نَظْرَةً فِى ٱلنُّجُومِ ﴿٨٨﴾

89. ಅವರು ಹೇಳಿದರು: "ನಾನು ಅಸ್ವಸ್ಥನಾಗಿದ್ದೇನೆ." فَقَالَ إِنِّى سَقِيمٌ ﴿٨٩﴾

90. ಆಗ ಜನರು ಇಬ್ರಾಹೀಮರನ್ನು ಬಿಟ್ಟು ತಿರುಗಿ ನಡೆದರು. فَتَوَلَّوْا۟ عَنْهُ مُدْبِرِينَ ﴿٩٠﴾

91. ಇಬ್ರಾಹೀಮ್ ಅವರ ದೇವರುಗಳ ಕಡೆಗೆ ತಿರುಗಿ ಕೇಳಿದರು: "ನೀವೇಕೆ ತಿನ್ನುವುದಿಲ್ಲ? فَرَاغَ إِلَىٰٓ ءَالِهَتِهِمْ فَقَالَ أَلَا تَأْكُلُونَ ﴿٩١﴾

92. ನಿಮಗೇನಾಗಿದೆ? ನೀವೇಕೆ ಮಾತನಾಡುವುದಿಲ್ಲ?" مَا لَكُمْ لَا تَنطِقُونَ ﴿٩٢﴾

93. ನಂತರ ಅವರು ಅವುಗಳ ಕಡೆಗೆ ತಿರುಗಿ ಬಲಗೈಯಿಂದ ಬಲವಾದ ಏಟು ಕೊಟ್ಟರು. فَرَاغَ عَلَيْهِمْ ضَرْبًۢا بِٱلْيَمِينِ ﴿٩٣﴾

94. ಜನರು ಅವರ ಬಳಿಗೆ ಓಡೋಡಿ ಬಂದರು. فَأَقْبَلُوٓا۟ إِلَيْهِ يَزِفُّونَ ﴿٩٤﴾

95. ಇಬ್ರಾಹೀಮ್ ಕೇಳಿದರು: "ನೀವೇ ಸ್ವತಃ ಕಡೆದು ನಿರ್ಮಿಸಿದ್ದನ್ನು ನೀವು ಆರಾಧಿಸುತ್ತಿದ್ದೀರಾ? قَالَ أَتَعْبُدُونَ مَا تَنْحِتُونَ ﴿٩٥﴾

96. ವಾಸ್ತವವಾಗಿ, ಅಲ್ಲಾಹನೇ ನಿಮ್ಮನ್ನು ಮತ್ತು ನೀವು ನಿರ್ಮಿಸುವುದನ್ನು ಸೃಷ್ಟಿಸಿದವನು." وَٱللَّهُ خَلَقَكُمْ وَمَا تَعْمَلُونَ ﴿٩٦﴾

97. ಜನರು ಹೇಳಿದರು: "ನೀವು ಅವನಿಗೆ ಒಂದು ದೊಡ್ಡ ಅಗ್ನಿಕುಂಡವನ್ನು ನಿರ್ಮಿಸಿ, ಅವನನ್ನು ಜ್ವಲಿಸುವ ಅಗ್ನಿಗೆ ಎಸೆಯಿರಿ." قَالُوا۟ ٱبْنُوا۟ لَهُۥ بُنْيَٰنًا فَأَلْقُوهُ فِى ٱلْجَحِيمِ ﴿٩٧﴾

98. ಅವರು ಇಬ್ರಾಹೀಮರನ್ನು ಕುತಂತ್ರದಿಂದ ನಾಶ ಮಾಡಲು ಬಯಸಿದ್ದರು. ಆದರೆ ನಾವು ಅವರನ್ನು ಅತ್ಯಂತ ಅಧಮರನ್ನಾಗಿ ಮಾಡಿದೆವು. فَأَرَادُوا۟ بِهِۦ كَيْدًا فَجَعَلْنَٰهُمُ ٱلْأَسْفَلِينَ ﴿٩٨﴾

| | |
|---|---|
| 99. ಇಬ್ರಾಹೀಮ್ ಹೇಳಿದರು: "ನಿಶ್ಚಯವಾಗಿಯೂ ನಾನು ನನ್ನ ಪರಿಪಾಲಕನ (ಅಲ್ಲಾಹನ) ಕಡೆಗೆ ತೆರಳುತ್ತೇನೆ. ಅವನು ನನಗೆ ದಾರಿ ತೋರಿಸುವನು. | وَقَالَ إِنِّي ذَاهِبٌ إِلَىٰ رَبِّي سَيَهْدِينِ ﴿٩٩﴾ |
| 100. ನನ್ನ ಪರಿಪಾಲಕನೇ! ನನಗೆ ನೀತಿವಂತರಲ್ಲಿ ಸೇರಿದ ಮಗುವನ್ನು ಕರುಣಿಸು." | رَبِّ هَبْ لِي مِنَ ٱلصَّٰلِحِينَ ﴿١٠٠﴾ |
| 101. ಆಗ ನಾವು ಅವರಿಗೆ ಸಹಿಷ್ಣುತೆಯುಳ್ಳ ಮಗು ಜನಿಸುವ ಬಗ್ಗೆ ಸುವಾರ್ತೆಯನ್ನು ತಿಳಿಸಿದೆವು. | فَبَشَّرْنَٰهُ بِغُلَٰمٍ حَلِيمٍ ﴿١٠١﴾ |
| 102. ನಂತರ ಅವನು (ಮಗು) ತಂದೆಯೊಂದಿಗೆ ಓಡಾಡುವ ಪ್ರಾಯಕ್ಕೆ ತಲುಪಿದಾಗ ಅವರು (ಇಬ್ರಾಹೀಂ) ಹೇಳಿದರು: "ಮಗೂ! ನಾನು ನಿನ್ನ ಕತ್ತು ಕೊಯ್ಯುತ್ತಿರುವಂತೆ ಕನಸು ಕಾಣುತ್ತಿದ್ದೇನೆ. ನಿನ್ನ ಅಭಿಪ್ರಾಯವೇನೆಂದು ಹೇಳು?" ಮಗ ಹೇಳಿದನು: "ಅಪ್ಪಾ! ನಿಮಗೆ ಆಜ್ಞಾಪಿಸಲಾಗಿರುವುದನ್ನು ನಿರ್ವಹಿಸಿರಿ. ಅಲ್ಲಾಹು ಬಯಸಿದರೆ ನಿಶ್ಚಯವಾಗಿಯೂ ನೀವು ನನ್ನನ್ನು ತಾಳ್ಮೆ ವಹಿಸುವವರಲ್ಲಿ ಕಾಣುವಿರಿ." | فَلَمَّا بَلَغَ مَعَهُ ٱلسَّعْيَ قَالَ يَٰبُنَيَّ إِنِّيٓ أَرَىٰ فِي ٱلْمَنَامِ أَنِّيٓ أَذْبَحُكَ فَٱنظُرْ مَاذَا تَرَىٰ ۚ قَالَ يَٰٓأَبَتِ ٱفْعَلْ مَا تُؤْمَرُ ۖ سَتَجِدُنِيٓ إِن شَآءَ ٱللَّهُ مِنَ ٱلصَّٰبِرِينَ ﴿١٠٢﴾ |
| 103. ನಂತರ ಅವರಿಬ್ಬರೂ (ಅಲ್ಲಾಹನ ಆಜ್ಞೆಗೆ) ಶರಣಾಗಿ, ಅವರು ಮಗನನ್ನು ಹಣೆಯ ಮೇಲೆ ಮಲಗಿಸಿದಾಗ. | فَلَمَّآ أَسْلَمَا وَتَلَّهُۥ لِلْجَبِينِ ﴿١٠٣﴾ |
| 104. ನಾವು ಅವರನ್ನು ಕರೆದು ಹೇಳಿದೆವು: "ಓ ಇಬ್ರಾಹೀಮ್! | وَنَٰدَيْنَٰهُ أَن يَٰٓإِبْرَٰهِيمُ ﴿١٠٤﴾ |
| 105. ನಿಶ್ಚಯವಾಗಿಯೂ ನೀವು ಕನಸನ್ನು ನಿಜಪಡಿಸಿದ್ದೀರಿ." ನಿಶ್ಚಯವಾಗಿಯೂ ನಾವು ನೀತಿವಂತರಿಗೆ ಈ ರೀತಿ ಪ್ರತಿಫಲವನ್ನು ನೀಡುತ್ತೇವೆ. | قَدْ صَدَّقْتَ ٱلرُّءْيَآ ۚ إِنَّا كَذَٰلِكَ نَجْزِي ٱلْمُحْسِنِينَ ﴿١٠٥﴾ |
| 106. ನಿಶ್ಚಯವಾಗಿಯೂ ಇದು ಸ್ಪಷ್ಟ ಪರೀಕ್ಷೆಯಾಗಿತ್ತು. | إِنَّ هَٰذَا لَهُوَ ٱلْبَلَٰٓؤُا۟ ٱلْمُبِينُ ﴿١٠٦﴾ |
| 107. ನಾವು ಅವರ (ಮಗನ) ಬದಲಿಗೆ ಬಲಿ ನೀಡಲು ಒಂದು ಮಹಾ ಬಲಿಮೃಗವನ್ನು ನೀಡಿದೆವು. | وَفَدَيْنَٰهُ بِذِبْحٍ عَظِيمٍ ﴿١٠٧﴾ |
| 108. ನಾವು ಅವರ (ಇಬ್ರಾಹೀಮರ) ಕೀರ್ತಿಯನ್ನು ಅವರ ನಂತರದವರಲ್ಲಿ ಉಳಿಸಿದೆವು. | وَتَرَكْنَا عَلَيْهِ فِي ٱلْءَاخِرِينَ ﴿١٠٨﴾ |
| 109. ಇಬ್ರಾಹೀಮರ ಮೇಲೆ ಶಾಂತಿಯಿರಲಿ! | سَلَٰمٌ عَلَىٰٓ إِبْرَٰهِيمَ ﴿١٠٩﴾ |
| 110. ನಾವು ನೀತಿವಂತರಿಗೆ ಈ ರೀತಿ ಪ್ರತಿಫಲವನ್ನು ನೀಡುತ್ತೇವೆ. | كَذَٰلِكَ نَجْزِي ٱلْمُحْسِنِينَ ﴿١١٠﴾ |
| 111. ನಿಶ್ಚಯವಾಗಿಯೂ ಅವರು ನಮ್ಮ ಸತ್ಯವಿಶ್ವಾಸಿ ದಾಸರಲ್ಲಿ ಸೇರಿದವರಾಗಿದ್ದರು. | إِنَّهُۥ مِنْ عِبَادِنَا ٱلْمُؤْمِنِينَ ﴿١١١﴾ |

112. ನಾವು ಅವರಿಗೆ ಇಸ್‌ಹಾಕರ ಜನನದ ಬಗ್ಗೆ ಸುವಾರ್ತೆಯನ್ನು ತಿಳಿಸಿದೆವು. ಅವರು ಸಜ್ಜನರಲ್ಲಿ ಸೇರಿದ ಒಬ್ಬ ಪ್ರವಾದಿಯಾಗಿದ್ದರು.

وَبَشَّرۡنَٰهُ بِإِسۡحَٰقَ نَبِيّٗا مِّنَ ٱلصَّٰلِحِينَ ﴿١١٢﴾

113. ನಾವು ಅವರಿಗೆ ಮತ್ತು ಇಸ್‌ಹಾಕರಿಗೆ ಸಮೃದ್ಧಿಯನ್ನು ದಯಪಾಲಿಸಿದೆವು. ಅವರಿಬ್ಬರ ಸಂತಾನದಲ್ಲಿ ಒಳಿತು ಮಾಡುವವರಿದ್ದಾರೆ. ಸ್ವತಃ ಅವರೊಡನೆಯೇ ಸ್ಪಷ್ಟವಾಗಿ ಅಕ್ರಮ-ವೆಸಗುವವರೂ ಇದ್ದಾರೆ.

وَبَٰرَكۡنَا عَلَيۡهِ وَعَلَىٰٓ إِسۡحَٰقَۚ وَمِن ذُرِّيَّتِهِمَا مُحۡسِنٞ وَظَالِمٞ لِّنَفۡسِهِۦ مُبِينٞ ﴿١١٣﴾

114. ನಿಶ್ಚಯವಾಗಿಯೂ ನಾವು ಮೂಸಾ ಮತ್ತು ಹಾರೂನರಿಗೆ ಉಪಕಾರ ಮಾಡಿದ್ದೆವು.

وَلَقَدۡ مَنَنَّا عَلَىٰ مُوسَىٰ وَهَٰرُونَ ﴿١١٤﴾

115. ನಾವು ಅವರನ್ನು ಮತ್ತು ಅವರ ಜನರನ್ನು ಮಹಾ ದುರಂತದಿಂದ ರಕ್ಷಿಸಿದೆವು.

وَنَجَّيۡنَٰهُمَا وَقَوۡمَهُمَا مِنَ ٱلۡكَرۡبِ ٱلۡعَظِيمِ ﴿١١٥﴾

116. ನಾವು ಅವರಿಗೆ ಸಹಾಯ ಮಾಡಿದೆವು. ಆಗ ಅವರೇ ವಿಜಯಿಗಳಾದರು.

وَنَصَرۡنَٰهُمۡ فَكَانُواْ هُمُ ٱلۡغَٰلِبِينَ ﴿١١٦﴾

117. ನಾವು ಅವರಿಗೆ (ವಿಷಯಗಳನ್ನು) ಸ್ಪಷ್ಟಪಡಿಸುವ ಗ್ರಂಥವನ್ನು ನೀಡಿದೆವು.

وَءَاتَيۡنَٰهُمَا ٱلۡكِتَٰبَ ٱلۡمُسۡتَبِينَ ﴿١١٧﴾

118. ನಾವು ಅವರನ್ನು ನೇರ ಮಾರ್ಗದಲ್ಲಿ ದೃಢವಾಗಿ ನಿಲ್ಲಿಸಿದೆವು.

وَهَدَيۡنَٰهُمَا ٱلصِّرَٰطَ ٱلۡمُسۡتَقِيمَ ﴿١١٨﴾

119. ನಾವು ಅವರ ಕೀರ್ತಿಯನ್ನು ನಂತರದ ತಲೆಮಾರುಗಳಲ್ಲಿ ಉಳಿಸಿದೆವು.

وَتَرَكۡنَا عَلَيۡهِمَا فِي ٱلۡأٓخِرِينَ ﴿١١٩﴾

120. ಮೂಸಾ ಮತ್ತು ಹಾರೂನರ ಮೇಲೆ ಶಾಂತಿಯಿರಲಿ!

سَلَٰمٌ عَلَىٰ مُوسَىٰ وَهَٰرُونَ ﴿١٢٠﴾

121. ನಿಶ್ಚಯವಾಗಿಯೂ ನಾವು ನೀತಿವಂತರಿಗೆ ಈ ರೀತಿ ಪ್ರತಿಫಲವನ್ನು ನೀಡುತ್ತೇವೆ.

إِنَّا كَذَٰلِكَ نَجۡزِي ٱلۡمُحۡسِنِينَ ﴿١٢١﴾

122. ನಿಶ್ಚಯವಾಗಿಯೂ ಅವರಿಬ್ಬರು ನಮ್ಮ ಸತ್ಯವಿಶ್ವಾಸಿ ದಾಸರಲ್ಲಿ ಸೇರಿದವರಾಗಿದ್ದರು.

إِنَّهُمَا مِنۡ عِبَادِنَا ٱلۡمُؤۡمِنِينَ ﴿١٢٢﴾

123. ನಿಶ್ಚಯವಾಗಿಯೂ ಇಲ್ಯಾಸ್ ಪ್ರವಾದಿಗಳಲ್ಲಿ ಒಬ್ಬರಾಗಿದ್ದರು.

وَإِنَّ إِلۡيَاسَ لَمِنَ ٱلۡمُرۡسَلِينَ ﴿١٢٣﴾

124. ಅವರು ತಮ್ಮ ಜನರೊಡನೆ ಹೇಳಿದ ಸಂದರ್ಭ: “ನೀವು ಅಲ್ಲಾಹನನ್ನು ಭಯಪಡುವುದಿಲ್ಲವೇ?”

إِذۡ قَالَ لِقَوۡمِهِۦٓ أَلَا تَتَّقُونَ ﴿١٢٤﴾

125. ನೀವು ಬಾಲ್ (ವಿಗ್ರಹವನ್ನು) ಕರೆದು ಪ್ರಾರ್ಥಿಸುತ್ತೀರಾ? ಮತ್ತು ಅತ್ಯುತ್ತಮ ಸೃಷ್ಟಿಕರ್ತನನ್ನು ತೊರೆಯುತ್ತೀರಾ?

أَتَدۡعُونَ بَعۡلٗا وَتَذَرُونَ أَحۡسَنَ ٱلۡخَٰلِقِينَ ﴿١٢٥﴾

126. ಅಂದರೆ ನಿಮ್ಮ ಮತ್ತು ನಿಮ್ಮ ಪೂರ್ವಜರ ಪರಿಪಾಲಕನಾದ ಅಲ್ಲಾಹನನ್ನು?
ٱللَّهَ رَبَّكُمۡ وَرَبَّ ءَابَآئِكُمُ ٱلۡأَوَّلِينَ ١٢٦

127. ಆದರೆ ಅವರು ಅವರನ್ನು ನಿಷೇಧಿಸಿದರು. ನಿಶ್ಚಯವಾಗಿಯೂ ಅವರನ್ನು (ಶಿಕ್ಷೆಗೆ) ಹಾಜರುಪಡಿಸಲಾಗುವುದು.
فَكَذَّبُوهُ فَإِنَّهُمۡ لَمُحۡضَرُونَ ١٢٧

128. ಅಲ್ಲಾಹನ ನಿಷ್ಕಳಂಕ ದಾಸರು ಇದಕ್ಕೆ ಹೊರತಾಗಿದ್ದಾರೆ.
إِلَّا عِبَادَ ٱللَّهِ ٱلۡمُخۡلَصِينَ ١٢٨

129. ನಂತರದ ತಲೆಮಾರುಗಳಲ್ಲಿ ನಾವು ಅವರ ಕೀರ್ತಿಯನ್ನು ಉಳಿಸಿದೆವು.
وَتَرَكۡنَا عَلَيۡهِ فِي ٱلۡأٓخِرِينَ ١٢٩

130. ಇಲ್ಯಾಸರ ಮೇಲೆ ಶಾಂತಿಯಿರಲಿ!
سَلَٰمٌ عَلَىٰٓ إِلۡ يَاسِينَ ١٣٠

131. ನಿಶ್ಚಯವಾಗಿಯೂ ನಾವು ನೀತಿವಂತರಿಗೆ ಈ ರೀತಿ ಪ್ರತಿಫಲವನ್ನು ನೀಡುತ್ತೇವೆ.
إِنَّا كَذَٰلِكَ نَجۡزِي ٱلۡمُحۡسِنِينَ ١٣١

132. ನಿಶ್ಚಯವಾಗಿಯೂ ಅವರು ನಮ್ಮ ಸತ್ಯವಿಶ್ವಾಸಿ ದಾಸರಲ್ಲಿ ಸೇರಿದವರಾಗಿದ್ದರು.
إِنَّهُۥ مِنۡ عِبَادِنَا ٱلۡمُؤۡمِنِينَ ١٣٢

133. ನಿಶ್ಚಯವಾಗಿಯೂ ಲೂತ್ ಸಂದೇಶವಾಹಕರಲ್ಲಿ ಸೇರಿದವರಾಗಿದ್ದರು.
وَإِنَّ لُوطٗا لَّمِنَ ٱلۡمُرۡسَلِينَ ١٣٣

134. ನಾವು ಅವರನ್ನು ಮತ್ತು ಅವರ ಕುಟುಂಬವನ್ನು ಸಂಪೂರ್ಣವಾಗಿ ರಕ್ಷಿಸಿದ ಸಂದರ್ಭ!
إِذۡ نَجَّيۡنَٰهُ وَأَهۡلَهُۥٓ أَجۡمَعِينَ ١٣٤

135. ಹಿಂದೆ ಉಳಿದವರಲ್ಲಿ ಸೇರಿದ ಒಬ್ಬ ವೃದ್ಧೆಯ ಹೊರತು.
إِلَّا عَجُوزٗا فِي ٱلۡغَٰبِرِينَ ١٣٥

136. ನಂತರ ಇತರರನ್ನು ನಾವು ನಾಶ ಮಾಡಿದೆವು.
ثُمَّ دَمَّرۡنَا ٱلۡأٓخَرِينَ ١٣٦

137. ನೀವು ಬೆಳಗಾಗುವಾಗ ಅವರ ಊರುಗಳ ಬಳಿಯಿಂದ ಸಾಗುತ್ತೀರಿ.
وَإِنَّكُمۡ لَتَمُرُّونَ عَلَيۡهِم مُّصۡبِحِينَ ١٣٧

138. ರಾತ್ರಿ ಕೂಡ. ಆದರೂ ನೀವು ಆಲೋಚಿಸುವುದಿಲ್ಲವೇ?
وَبِٱلَّيۡلِۚ أَفَلَا تَعۡقِلُونَ ١٣٨

139. ನಿಶ್ಚಯವಾಗಿಯೂ ಯೂನುಸ್ ಸಂದೇಶವಾಹಕರಲ್ಲಿ ಸೇರಿದವರಾಗಿದ್ದರು.
وَإِنَّ يُونُسَ لَمِنَ ٱلۡمُرۡسَلِينَ ١٣٩

140. ಅವರು ತುಂಬಿ ತುಳುಕುವ ನಾವೆಯ ಬಳಿಗೆ ಪಲಾಯನ ಮಾಡಿದ ಸಂದರ್ಭ!
إِذۡ أَبَقَ إِلَى ٱلۡفُلۡكِ ٱلۡمَشۡحُونِ ١٤٠

141. ನಂತರ ಅಲ್ಲಿ ಚೀಟಿಯೆತ್ತಲಾದಾಗ ಅವರು ಪರಾಜಿತರಾದರು.
فَسَاهَمَ فَكَانَ مِنَ ٱلۡمُدۡحَضِينَ ١٤١

142. ನಂತರ ಅವರು ಆಕ್ಷೇಪಾರ್ಹ ಸ್ಥಿತಿಯಲ್ಲಿದ್ದಾಗ ಮೀನು ಅವರನ್ನು ನುಂಗಿತು.
فَٱلۡتَقَمَهُ ٱلۡحُوتُ وَهُوَ مُلِيمٞ ١٤٢

| | |
|---|---|
| 143. ಆದರೆ ಅವರು ಅಲ್ಲಾಹನ ಪರಿಶುದ್ಧಿಯನ್ನು ಕೊಂಡಾಡುವವರಲ್ಲಿ ಸೇರದಿರುತ್ತಿದ್ದರೆ | فَلَوْلَآ أَنَّهُۥ كَانَ مِنَ ٱلْمُسَبِّحِينَ ﴿١٤٣﴾ |
| 144. ಜನರಿಗೆ ಜೀವ ನೀಡಿ ಎಬ್ಬಿಸಲಾಗುವ ದಿನದವರೆಗೂ ಅವರು ಅದರ ಹೊಟ್ಟೆಯಲ್ಲೇ ಉಳಿಯುತ್ತಿದ್ದರು! | لَلَبِثَ فِى بَطْنِهِۦٓ إِلَىٰ يَوْمِ يُبْعَثُونَ ﴿١٤٤﴾ |
| 145. ನಂತರ ನಾವು ಅವರನ್ನು ಬಯಲು ಪ್ರದೇಶಕ್ಕೆ ಎಸೆದೆವು. ಆಗ ಅವರು ಅಸ್ವಸ್ಥರಾಗಿದ್ದರು. | فَنَبَذْنَٰهُ بِٱلْعَرَآءِ وَهُوَ سَقِيمٌ ﴿١٤٥﴾ |
| 146. ನಾವು ಅವರಿಗೆ (ನೆರಳು ನೀಡುವ) ಸೋರೆ ಬಳ್ಳಿಯ ಮರವನ್ನು ಬೆಳೆಸಿದೆವು. | وَأَنۢبَتْنَا عَلَيْهِ شَجَرَةً مِّن يَقْطِينٍ ﴿١٤٦﴾ |
| 147. ನಾವು ಅವರನ್ನು ಒಂದು ಲಕ್ಷ ಅಥವಾ ಅದಕ್ಕಿಂತಲೂ ಹೆಚ್ಚಿನ ಜನರ ಬಳಿಗೆ ಕಳುಹಿಸಿದೆವು. | وَأَرْسَلْنَٰهُ إِلَىٰ مِا۟ئَةِ أَلْفٍ أَوْ يَزِيدُونَ ﴿١٤٧﴾ |
| 148. ಅವರು (ಆ ಜನರು) ವಿಶ್ವಾಸವಿಟ್ಟರು. ಆದ್ದರಿಂದ ನಾವು ಅವರಿಗೆ ಒಂದು ಕಾಲದವರೆಗೆ ಸುಖ ಜೀವನವನ್ನು ಒದಗಿಸಿದೆವು. | فَـَٔامَنُوا۟ فَمَتَّعْنَٰهُمْ إِلَىٰ حِينٍ ﴿١٤٨﴾ |
| 149. (ಓ ಪ್ರವಾದಿಯವರೇ!) ಅವರೊಂದಿಗೆ ಕೇಳಿರಿ: "ನಿಮ್ಮ ಪರಿಪಾಲಕನಿಗೆ ಹೆಣ್ಣು ಮಕ್ಕಳು ಮತ್ತು ಅವರಿಗೆ ಗಂಡುಮಕ್ಕಳೇ? | فَٱسْتَفْتِهِمْ أَلِرَبِّكَ ٱلْبَنَاتُ وَلَهُمُ ٱلْبَنُونَ ﴿١٤٩﴾ |
| 150. ಅಥವಾ ನಾವು ದೇವದೂತರುಗಳನ್ನು ಸ್ತ್ರೀಯರನ್ನಾಗಿ ಸೃಷ್ಟಿಸುವಾಗ ಅವರು ಅಲ್ಲಿ ಉಪಸ್ಥಿತರಿದ್ದರೇ?" | أَمْ خَلَقْنَا ٱلْمَلَٰٓئِكَةَ إِنَٰثًا وَهُمْ شَٰهِدُونَ ﴿١٥٠﴾ |
| 151. ತಿಳಿಯಿರಿ! ಅವರು ಕೇವಲ ಸುಳ್ಳನ್ನು ಕಲ್ಪಿಸಿ ಹೇಳುತ್ತಿದ್ದಾರೆ. | أَلَآ إِنَّهُم مِّنْ إِفْكِهِمْ لَيَقُولُونَ ﴿١٥١﴾ |
| 152. ಅಲ್ಲಾಹನಿಗೆ ಮಕ್ಕಳಿದ್ದಾರೆಂದು. ನಿಶ್ಚಯವಾಗಿಯೂ ಅವರು ಸುಳ್ಳು ಹೇಳುವವರಾಗಿದ್ದಾರೆ. | وَلَدَ ٱللَّهُ وَإِنَّهُمْ لَكَٰذِبُونَ ﴿١٥٢﴾ |
| 153. ಅಲ್ಲಾಹು ಗಂಡು ಮಕ್ಕಳಿಗಿಂತ ಹೆಣ್ಣು ಮಕ್ಕಳಿಗೆ ಪ್ರಾಶಸ್ತ್ಯ ನೀಡಿದನೇ? | أَصْطَفَى ٱلْبَنَاتِ عَلَى ٱلْبَنِينَ ﴿١٥٣﴾ |
| 154. ನಿಮಗೇನಾಗಿದೆ? ನೀವು ಹೇಗೆ ತೀರ್ಪು ನೀಡುತ್ತಿದ್ದೀರಿ? | مَا لَكُمْ كَيْفَ تَحْكُمُونَ ﴿١٥٤﴾ |
| 155. ನೀವು ಆಲೋಚಿಸುವುದಿಲ್ಲವೇ? | أَفَلَا تَذَكَّرُونَ ﴿١٥٥﴾ |
| 156. ಇದಕ್ಕೆ ನಿಮ್ಮ ಬಳಿ ಯಾವುದಾದರೂ ಸ್ಪಷ್ಟ ಸಾಕ್ಷ್ಯಾಧಾರವಿದೆಯೇ? | أَمْ لَكُمْ سُلْطَٰنٌ مُّبِينٌ ﴿١٥٦﴾ |
| 157. ಹಾಗಿದ್ದರೆ ನೀವು ನಿಮ್ಮ ಗ್ರಂಥವನ್ನು ತನ್ನಿರಿ. ನೀವು ಸತ್ಯವಂತರಾಗಿದ್ದರೆ! | فَأْتُوا۟ بِكِتَٰبِكُمْ إِن كُنتُمْ صَٰدِقِينَ ﴿١٥٧﴾ |
| 158. ಅವರು ಅವನ (ಅಲ್ಲಾಹನ) ಮತ್ತು ಜಿನ್ನ್‌ಗಳ ಮಧ್ಯೆ ಕುಟುಂಬ ಸಂಬಂಧವನ್ನು ಸ್ಥಾಪಿಸಿದ್ದರು. ಆದರೆ (ಇಂತಹ ನಂಬಿಕೆಯಿರುವ | وَجَعَلُوا۟ بَيْنَهُۥ وَبَيْنَ ٱلْجِنَّةِ نَسَبًا ۚ وَلَقَدْ عَلِمَتِ ٱلْجِنَّةُ إِنَّهُمْ لَمُحْضَرُونَ ﴿١٥٨﴾ |

ಜನರನ್ನು) ನಿಶ್ಚಯವಾಗಿಯೂ ಶಿಕ್ಷೆಗೆ ಹಾಜರುಪಡಿಸಲಾಗುವು-
ದೆಂದು ಜಿನ್ನ್‌ಗಳಿಗೆ ತಿಳಿದಿದೆ.

---

159. ಅವರು (ಅಲ್ಲಾಹನ ಬಗ್ಗೆ) ವರ್ಣಿಸಿ ಹೇಳುವ ಇಂತಹ ಸುಳ್ಳುಗಳಿಂದ ಅಲ್ಲಾಹು ಎಷ್ಟೋ ಪರಿಶುದ್ಧನಾಗಿದ್ದಾನೆ. — سُبۡحَٰنَ ٱللَّهِ عَمَّا يَصِفُونَ ١٥٩

---

160. ಆದರೆ ಅಲ್ಲಾಹನ ನಿಷ್ಕಳಂಕ ದಾಸರು (ಇದರಿಂದ) ಹೊರತಾಗಿದ್ದಾರೆ. — إِلَّا عِبَادَ ٱللَّهِ ٱلۡمُخۡلَصِينَ ١٦٠

---

161. ನಿಶ್ಚಯವಾಗಿಯೂ ನೀವು ಮತ್ತು ನೀವು ಆರಾಧಿಸುತ್ತಿರುವ ದೇವರುಗಳು. — فَإِنَّكُمۡ وَمَا تَعۡبُدُونَ ١٦١

---

162. ಯಾರನ್ನೂ ಅವನಿಂದ (ಅಲ್ಲಾಹನಿಂದ) ತಪ್ಪಿಸಿಬಿಡಲು ನಿಮಗೆ ಸಾಧ್ಯವಿಲ್ಲ. — مَآ أَنتُمۡ عَلَيۡهِ بِفَٰتِنِينَ ١٦٢

---

163. ನರಕವಾಸಿಯಾಗುವವನ ಹೊರತು. — إِلَّا مَنۡ هُوَ صَالِ ٱلۡجَحِيمِ ١٦٣

---

164. (ದೇವದೂತರುಗಳು ಹೇಳುತ್ತಾರೆ): “ನಮ್ಮಲ್ಲಿ ಪ್ರತಿಯೊಬ್ಬರಿಗೂ ಒಂದು ನಿಶ್ಚಿತ ಸ್ಥಾನವಿದೆ. — وَمَا مِنَّآ إِلَّا لَهُۥ مَقَامٞ مَّعۡلُومٞ ١٦٤

---

165. ನಿಶ್ಚಯವಾಗಿಯೂ ನಾವು (ಅಲ್ಲಾಹನನ್ನು ಆರಾಧಿಸಲು) ಸಾಲುಗಟ್ಟಿ ನಿಲ್ಲುತ್ತೇವೆ. — وَإِنَّا لَنَحۡنُ ٱلصَّآفُّونَ ١٦٥

---

166. ನಿಶ್ಚಯವಾಗಿಯೂ ನಾವು (ಅಲ್ಲಾಹನ) ಪರಿಶುದ್ಧಿಯನ್ನು ಕೊಂಡಾಡುವವರಾಗಿದ್ದೇವೆ.” — وَإِنَّا لَنَحۡنُ ٱلۡمُسَبِّحُونَ ١٦٦

---

167. ನಿಶ್ಚಯವಾಗಿಯೂ ಅವರು (ಸತ್ಯನಿಷೇಧಿಗಳು) ಹೇಳುತ್ತಿದ್ದರು: — وَإِن كَانُواْ لَيَقُولُونَ ١٦٧

---

168. “ನಮ್ಮ ಬಳಿ ಪೂರ್ವಜರ ಯಾವುದಾದರೂ ಉಪದೇಶವು ಇರುತ್ತಿದ್ದರೆ. — لَوۡ أَنَّ عِندَنَا ذِكۡرٗا مِّنَ ٱلۡأَوَّلِينَ ١٦٨

---

169. ನಾವು ಕೂಡ ಅಲ್ಲಾಹನ ನಿಷ್ಕಳಂಕ ದಾಸರಾಗಿರುತ್ತಿದ್ದೆವು.” — لَكُنَّا عِبَادَ ٱللَّهِ ٱلۡمُخۡلَصِينَ ١٦٩

---

170. ಆದರೂ ಅವರು ಅದನ್ನು (ಪವಿತ್ರ ಕುರ್‌ಆನನ್ನು) ನಿಷೇಧಿಸಿದರು. ಆದ್ದರಿಂದ ಸದ್ಯವೇ ಅವರು ತಿಳಿಯುವರು. — فَكَفَرُواْ بِهِۦۖ فَسَوۡفَ يَعۡلَمُونَ ١٧٠

---

171. ನಮ್ಮ ವಾಗ್ದಾನವು ಸಂದೇಶವಾಹಕರುಗಳಾದ ನಮ್ಮ ದಾಸರಿಗೆ ಈಗಾಗಲೇ ಜಾರಿಯಾಗಿಬಿಟ್ಟಿದೆ. — وَلَقَدۡ سَبَقَتۡ كَلِمَتُنَا لِعِبَادِنَا ٱلۡمُرۡسَلِينَ ١٧١

---

172. (ಅದೇನೆಂದರೆ) ನಿಶ್ಚಯವಾಗಿಯೂ ಅವರಿಗೇ ಸಹಾಯ ಮಾಡಲಾಗುವುದೆಂದು. — إِنَّهُمۡ لَهُمُ ٱلۡمَنصُورُونَ ١٧٢

---

173. ನಿಶ್ಚಯವಾಗಿಯೂ ನಮ್ಮ ಸೈನ್ಯವೇ ವಿಜಯಿಯಾಗುವುದೆಂದು. — وَإِنَّ جُندَنَا لَهُمُ ٱلۡغَٰلِبُونَ ١٧٣

| | | |
|---|---|---|
| 174. | ಆದ್ದರಿಂದ ನೀವು ಕೆಲವು ದಿನಗಳ ತನಕ ಅವರಿಂದ ವಿಮುಖರಾಗಿರಿ. | فَتَوَلَّ عَنۡهُمۡ حَتَّىٰ حِينٖ ﴿١٧٤﴾ |
| 175. | ಅವರನ್ನು ವೀಕ್ಷಿಸುತ್ತಿರಿ. ಅವರು ಕೂಡ ಮುಂದೆ (ಏನಾಗುವುದೆಂದು) ನೋಡುವರು. | وَأَبۡصِرۡهُمۡ فَسَوۡفَ يُبۡصِرُونَ ﴿١٧٥﴾ |
| 176. | ಅವರು ನಮ್ಮ ಶಿಕ್ಷೆಗಾಗಿ ತ್ವರೆ ಮಾಡುತ್ತಿದ್ದಾರೆಯೇ? | أَفَبِعَذَابِنَا يَسۡتَعۡجِلُونَ ﴿١٧٦﴾ |
| 177. | ಆದರೆ ನಮ್ಮ ಶಿಕ್ಷೆಯು ಅವರ ಅಂಗಳದಲ್ಲಿ ಇಳಿಯುವಾಗ ಮುನ್ನೆಚ್ಚರಿಕೆ ನೀಡಲಾದವರ ಮುಂಜಾನೆಯು ಬಹಳ ನಿಕೃಷ್ಟವಾಗಿರುವುದು! | فَإِذَا نَزَلَ بِسَاحَتِهِمۡ فَسَآءَ صَبَاحُ ٱلۡمُنذَرِينَ ﴿١٧٧﴾ |
| 178. | ಆದ್ದರಿಂದ ನೀವು ಕೆಲವು ದಿನಗಳ ತನಕ ಅವರಿಂದ ವಿಮುಖರಾಗಿರಿ. | وَتَوَلَّ عَنۡهُمۡ حَتَّىٰ حِينٖ ﴿١٧٨﴾ |
| 179. | ಅವರನ್ನು ವೀಕ್ಷಿಸುತ್ತಿರಿ. ಅವರು ಕೂಡ ಮುಂದೆ (ಏನಾಗುವುದೆಂದು) ನೋಡುವರು. | وَأَبۡصِرۡ فَسَوۡفَ يُبۡصِرُونَ ﴿١٧٩﴾ |
| 180. | ಮಹಾ ಪ್ರತಿಷ್ಠೆಯ ಒಡೆಯನಾದ ನಿಮ್ಮ ಪರಿಪಾಲಕನು (ಅಲ್ಲಾಹು) ಅವರು ವರ್ಣಿಸುವ ಎಲ್ಲಾ ಸುಳ್ಳುಗಳಿಂದ ಎಷ್ಟೋ ಪರಿಶುದ್ಧನಾಗಿದ್ದಾನೆ. | سُبۡحَٰنَ رَبِّكَ رَبِّ ٱلۡعِزَّةِ عَمَّا يَصِفُونَ ﴿١٨٠﴾ |
| 181. | ಸಂದೇಶವಾಹಕರುಗಳ ಮೇಲೆ ಶಾಂತಿಯಿರಲಿ! | وَسَلَٰمٌ عَلَى ٱلۡمُرۡسَلِينَ ﴿١٨١﴾ |
| 182. | ಸರ್ವಲೋಕಗಳ ಪರಿಪಾಲಕನಾದ ಅಲ್ಲಾಹನಿಗೆ ಸರ್ವಸ್ತುತಿ. | وَٱلۡحَمۡدُ لِلَّهِ رَبِّ ٱلۡعَٰلَمِينَ ﴿١٨٢﴾ |

# 38. ಸ್ವಾದ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ಸ್ವಾದ್. ಉಪದೇಶವನ್ನು ಒಳಗೊಂಡಿರುವ ಕುರ್‌ಆನ್‌ನ ಮೇಲಾಣೆ! | صٓۚ وَٱلۡقُرۡءَانِ ذِي ٱلذِّكۡرِ ﴿١﴾ |
| 2. | ಆದರೆ ಸತ್ಯನಿಷೇಧಿಗಳು ದುರಭಿಮಾನ ಮತ್ತು ವಿರೋಧದಲ್ಲಿದ್ದಾರೆ. | بَلِ ٱلَّذِينَ كَفَرُواْ فِي عِزَّةٖ وَشِقَاقٖ ﴿٢﴾ |
| 3. | ನಾವು ಅವರಿಗಿಂತ ಮುಂಚೆ ಎಷ್ಟೋ ತಲೆಮಾರುಗಳನ್ನು ನಾಶ ಮಾಡಿದ್ದೇವೆ. ಆಗ ಅವರು ಎಲ್ಲಾ ರೀತಿಯಲ್ಲೂ ಚೀತ್ಕರಿಸಿದರು. ಆದರೆ ಅದು ಪಾರಾಗುವ ಸಮಯವಾಗಿರಲಿಲ್ಲ. | كَمۡ أَهۡلَكۡنَا مِن قَبۡلِهِم مِّن قَرۡنٖ فَنَادَواْ وَّلَاتَ حِينَ مَنَاصٖ ﴿٣﴾ |
| 4. | ಅವರಿಂದಲೇ ಒಬ್ಬ ಸಂದೇಶವಾಹಕರು ಅವರ ಬಳಿಗೆ | وَعَجِبُوٓاْ أَن جَآءَهُم مُّنذِرٞ مِّنۡهُمۡۖ وَقَالَ |

ಬಂದಿರುವುದನ್ನು ಕಂಡು ಅವರು ಆಶ್ಚರ್ಯಪಟ್ಟರು. ಸತ್ಯನಿಷೇಧಿಗಳು ಹೇಳಿದರು: "ಇವನೊಬ್ಬ ಮಾಟಗಾರ ಮತ್ತು ಸುಳ್ಳುಗಾರ!

ٱلْكَٰفِرُونَ هَٰذَا سَٰحِرٌ كَذَّابٌ ٤

---

5. ಇವನು ಇಷ್ಟೊಂದು ದೇವರುಗಳನ್ನು ಏಕೈಕ ದೇವರಾಗಿ ಮಾಡಿದನೇ? ನಿಜಕ್ಕೂ ಇದೊಂದು ಅಚ್ಚರಿದಾಯಕ ವಿಷಯವಾಗಿದೆ!"

أَجَعَلَ ٱلْـَٔالِهَةَ إِلَٰهًا وَٰحِدًا ۖ إِنَّ هَٰذَا لَشَىْءٌ
عُجَابٌ ٥

---

6. ಅವರಲ್ಲಿನ ಸರದಾರರು ಹೇಳುತ್ತಾ ಸಾಗಿದರು: "ನಿಮ್ಮ ಧರ್ಮದಲ್ಲೇ ಮುಂದುವರಿಯಿರಿ ಮತ್ತು ನಿಮ್ಮ ದೇವರುಗಳ ವಿಷಯದಲ್ಲಿ ತಾಳ್ಮೆಯಿಂದಿರಿ. ಖಂಡಿತವಾಗಿಯೂ ಇದೊಂದು ಉದ್ದೇಶಪೂರ್ವಕ ಸಂಗತಿಯಾಗಿದೆ.

وَٱنطَلَقَ ٱلْمَلَأُ مِنْهُمْ أَنِ ٱمْشُوا۟ وَٱصْبِرُوا۟ عَلَىٰٓ
ءَالِهَتِكُمْ ۖ إِنَّ هَٰذَا لَشَىْءٌ يُرَادُ ٦

---

7. ನಾವು ಕೊನೆಯ ಧರ್ಮದಲ್ಲಿಯೂ[1] ಇದರ ಬಗ್ಗೆ ಕೇಳಿಲ್ಲ. ಇದೊಂದು ಸುಳ್ಳು ಸೃಷ್ಟಿಯಲ್ಲದೆ ಇನ್ನೇನೂ ಅಲ್ಲ!"

مَا سَمِعْنَا بِهَٰذَا فِى ٱلْمِلَّةِ ٱلْـَٔاخِرَةِ إِنْ هَٰذَآ إِلَّا
ٱخْتِلَٰقٌ ٧

---

8. (ಅವರು ಹೇಳಿದರು): "ನಮ್ಮೆಲ್ಲರ ನಡುವೆ ಅವನಿಗೆ ಮಾತ್ರ ದೇವವಾಣಿಯನ್ನು ಅವತೀರ್ಣಗೊಳಿಸಲಾಗಿದೆಯೇ?" ಅಲ್ಲ, ವಾಸ್ತವವಾಗಿ ಅವರು ನನ್ನ ದೇವವಾಣಿಯ ಬಗ್ಗೆ ಸಂಶಯದ-ಲ್ಲಿದ್ದಾರೆ. ಅಲ್ಲ, ವಾಸ್ತವವಾಗಿ ಅವರು ಈ ತನಕ ನನ್ನ ಶಿಕ್ಷೆಯ ರುಚಿಯನ್ನು ನೋಡಿಲ್ಲ.

أَءُنزِلَ عَلَيْهِ ٱلذِّكْرُ مِنۢ بَيْنِنَا ۚ بَلْ هُمْ فِى شَكٍّ
مِّن ذِكْرِى ۚ بَل لَّمَّا يَذُوقُوا۟ عَذَابِ ٨

---

9. ಅವರ ಬಳಿ ಪ್ರಬಲನು ಮತ್ತು ಮಹಾ ಔದಾರ್ಯವಂತನಾದ ನಿಮ್ಮ ಪರಿಪಾಲಕನ (ಅಲ್ಲಾಹನ) ದಯೆಯ ಖಜಾನೆಗಳಿವೆಯೇ?

أَمْ عِندَهُمْ خَزَآئِنُ رَحْمَةِ رَبِّكَ ٱلْعَزِيزِ
ٱلْوَهَّابِ ٩

---

10. ಅಥವಾ ಭೂಮ್ಯಾಕಾಶಗಳು ಮತ್ತು ಅವುಗಳ ನಡುವೆಯಿರುವ ಎಲ್ಲಾ ವಸ್ತುಗಳ ಸಾರ್ವಭೌಮತ್ವವು ಅವರಿಗೆ ಸೇರಿದೆಯೇ? ಹಾಗಿದ್ದರೆ ಅವರು ಆ ಮಾರ್ಗಗಳ ಮೂಲಕ (ಆಕಾಶಲೋಕಕ್ಕೆ) ಏರಿ ಹೋಗಲಿ!

أَمْ لَهُم مُّلْكُ ٱلسَّمَٰوَٰتِ وَٱلْأَرْضِ وَمَا بَيْنَهُمَا ۖ
فَلْيَرْتَقُوا۟ فِى ٱلْأَسْبَٰبِ ١٠

---

11. ಇವರು (ದೊಡ್ಡ ದೊಡ್ಡ) ಸೈನ್ಯಗಳ ಪೈಕಿ ಸೋತು ಸುಣ್ಣವಾಗುವ ಒಂದು (ಚಿಕ್ಕ) ಸೈನ್ಯವಾಗಿದ್ದಾರೆ.

جُندٌ مَّا هُنَالِكَ مَهْزُومٌ مِّنَ ٱلْأَحْزَابِ ١١

---

12. ಅವರಿಗಿಂತ ಮೊದಲು ನೂಹರ ಜನರು, ಆದ್ ಗೋತ್ರದವರು ಮತ್ತು ಗೂಟಗಳ ಒಡೆಯನಾದ ಫರೋಹ[2] ಸತ್ಯವನ್ನು ನಿಷೇಧಿಸಿದ್ದರು.

كَذَّبَتْ قَبْلَهُمْ قَوْمُ نُوحٍ وَعَادٌ وَفِرْعَوْنُ ذُو
ٱلْأَوْتَادِ ١٢

---

[1] ಕೊನೆಯ ಧರ್ಮ ಎಂದರೆ ಬಹುಶಃ ಅವರದ್ದೇ ಬಹುದೇವಾರಾಧಕ ಧರ್ಮ ಅಥವಾ ಕ್ರೈಸ್ತ ಧರ್ಮವಾಗಿಬಹುದು.

[2] ಅವನು ಎಷ್ಟರಮಟ್ಟಿಗೆ ಕ್ರೂರನಾಗಿದ್ದನೆಂದರೆ ಅವನಿಗೆ ಯಾರ ಮೇಲಾದರೂ ಕೋಪ ಬಂದರೆ ಅವನ ಕೈ-ಕಾಲು ಮತ್ತು ತಲೆಗಳಿಗೆ ಗೂಟಗಳನ್ನು ಬಡಿಯುತ್ತಿದ್ದನು.

| | | |
|---|---|---|
| 13. | ಸಮೂದ್ ಗೋತ್ರ, ಲೂತರ ಜನರು ಮತ್ತು ಐಕತ್‌ನ ಜನರು ಕೂಡ (ಸತ್ಯವನ್ನು ನಿಷೇಧಿಸಿದ್ದರು). ಇವು (ದೊಡ್ಡ ದೊಡ್ಡ) ಸೈನ್ಯಗಳಾಗಿದ್ದವು. | وَثَمُودُ وَقَوۡمُ لُوطٖ وَأَصۡحَٰبُ لۡـَٔيۡكَةِۚ أُوْلَٰٓئِكَ ٱلۡأَحۡزَابُ ١٣ |
| 14. | ಇವರಲ್ಲಿ ಸಂದೇಶವಾಹಕರುಗಳನ್ನು ನಿಷೇಧಿಸದವರು ಯಾರೂ ಇರಲಿಲ್ಲ. ಆದ್ದರಿಂದ ನನ್ನ ಶಿಕ್ಷೆಯು (ಅವರ ವಿಷಯದಲ್ಲಿ) ಖಾತ್ರಿಯಾಯಿತು. | إِن كُلٌّ إِلَّا كَذَّبَ ٱلرُّسُلَ فَحَقَّ عِقَابِ ١٤ |
| 15. | ಇವರು ಒಂದು ಭಯಾನಕ ಚೀತ್ಕಾರವನ್ನಲ್ಲದೆ ಬೇರೇನನ್ನೂ ಕಾಯುವುದಿಲ್ಲ. ಅದರಲ್ಲಿ ಯಾವುದೇ ವಿರಾಮ (ಅಥವಾ ಕಾಲಾವಕಾಶ) ಇರುವುದಿಲ್ಲ. | وَمَا يَنظُرُ هَٰٓؤُلَآءِ إِلَّا صَيۡحَةٗ وَٰحِدَةٗ مَّا لَهَا مِن فَوَاقٖ ١٥ |
| 16. | ಅವರು ಹೇಳುವರು: "ನಮ್ಮ ಪರಿಪಾಲಕನೇ! ವಿಚಾರಣೆಯ ದಿನಕ್ಕಿಂತ ಮೊದಲೇ ನಮ್ಮ ವಿಧಿಬರಹವನ್ನು ನಮಗೆ ನೀಡು." | وَقَالُواْ رَبَّنَا عَجِّل لَّنَا قِطَّنَا قَبۡلَ يَوۡمِ ٱلۡحِسَابِ ١٦ |
| 17. | ಅವರು ಹೇಳುತ್ತಿರುವ ಮಾತುಗಳ ಬಗ್ಗೆ ನೀವು ತಾಳ್ಮೆಯಿಂದಿರಿ. ನಮ್ಮ ಬಲಿಷ್ಠ ದಾಸರಾಗಿದ್ದ ದಾವೂದರನ್ನು ಸ್ಮರಿಸಿ. ನಿಶ್ಚಯವಾಗಿಯೂ ಅವರು ಅತಿಹೆಚ್ಚು ಪಶ್ಚಾತ್ತಾಪಪಡುತ್ತಿದ್ದರು. | ٱصۡبِرۡ عَلَىٰ مَا يَقُولُونَ وَٱذۡكُرۡ عَبۡدَنَا دَاوُۥدَ ذَا ٱلۡأَيۡدِۖ إِنَّهُۥٓ أَوَّابٌ ١٧ |
| 18. | ನಾವು ಪರ್ವತಗಳನ್ನು ಅವರಿಗೆ ಅಧೀನಗೊಳಿಸಿದ್ದೆವು. ಅವು ಸಂಜೆ ಮತ್ತು ಮುಂಜಾನೆ ಅವರ ಜೊತೆಗೆ ಅಲ್ಲಾಹನ ಪರಿಶುದ್ಧಿಯನ್ನು ಕೊಂಡಾಡುತ್ತಿದ್ದವು. | إِنَّا سَخَّرۡنَا ٱلۡجِبَالَ مَعَهُۥ يُسَبِّحۡنَ بِٱلۡعَشِيِّ وَٱلۡإِشۡرَاقِ ١٨ |
| 19. | ಹಕ್ಕಿಗಳನ್ನು ಕೂಡ ಒಟ್ಟುಗೂಡಿಸಲಾಗಿತ್ತು. ಎಲ್ಲವೂ ಅವರ ಆಜ್ಞೆಗೆ ವಿಧೇಯವಾಗಿದ್ದವು. | وَٱلطَّيۡرَ مَحۡشُورَةٗۖ كُلّٞ لَّهُۥٓ أَوَّابٞ ١٩ |
| 20. | ನಾವು ಅವರ ಸಾಮ್ರಾಜ್ಯವನ್ನು ಬಲಪಡಿಸಿದೆವು ಮತ್ತು ಅವರಿಗೆ ವಿವೇಕವನ್ನು ಹಾಗೂ ತೀರ್ಪು ನೀಡುವ ಮಾತುಗಾರಿಕೆಯನ್ನು ನೀಡಿದ್ದೆವು. | وَشَدَدۡنَا مُلۡكَهُۥ وَءَاتَيۡنَٰهُ ٱلۡحِكۡمَةَ وَفَصۡلَ ٱلۡخِطَابِ ٢٠ |
| 21. | ಜಗಳವಾಡುವವರ ಸಮಾಚಾರವು ನಿಮಗೆ ತಲುಪಿದೆಯೇ? ಅವರು ಪ್ರಾರ್ಥನಾ ಪೀಠದ ಗೋಡೆಯನ್ನು ಏರಿ ಬಂದ ಸಂದರ್ಭ. | وَهَلۡ أَتَىٰكَ نَبَؤُاْ ٱلۡخَصۡمِ إِذۡ تَسَوَّرُواْ ٱلۡمِحۡرَابَ ٢١ |
| 22. | ಅವರು ದಾವೂದರ ಬಳಿಗೆ ತಲುಪಿದರು. ದಾವೂದ್ ಅವರನ್ನು ಕಂಡು ಗಾಬರಿಯಾದರು. ಅವರು ಹೇಳಿದರು: "ಭಯಪಡಬೇಡಿ. ನಾವು ಎದುರಾಳಿಗಳಾಗಿದ್ದೇವೆ. ನಮ್ಮಲ್ಲಿ ಒಬ್ಬರು ಇನ್ನೊಬ್ಬರ ಮೇಲೆ ದಬ್ಬಾಳಿಕೆ ಮಾಡಿದ್ದಾರೆ. ನೀವು ನಮ್ಮ ನಡುವೆ ನ್ಯಾಯಬದ್ಧವಾದ ತೀರ್ಪನ್ನು ನೀಡಿರಿ. ಅನ್ಯಾಯವೆಸಗಬೇಡಿ. ನಮಗೆ ನೇರ ಮಾರ್ಗವನ್ನು ತೋರಿಸಿ. | إِذۡ دَخَلُواْ عَلَىٰ دَاوُۥدَ فَفَزِعَ مِنۡهُمۡۖ قَالُواْ لَا تَخَفۡۖ خَصۡمَانِ بَغَىٰ بَعۡضُنَا عَلَىٰ بَعۡضٖ فَٱحۡكُم بَيۡنَنَا بِٱلۡحَقِّ وَلَا تُشۡطِطۡ وَٱهۡدِنَآ إِلَىٰ سَوَآءِ ٱلصِّرَٰطِ ٢٢ |

23. ಇವನು ನನ್ನ ಸಹೋದರ. ಇವನಿಗೆ ತೊಂಬತ್ತೊಂಬತ್ತು ಹೆಣ್ಣುಕುರಿಗಳಿವೆ. ನನಗಿರುವುದು ಒಂದು ಹೆಣ್ಣುಕುರಿ. ಆದರೆ ಅವನು, "ಅದನ್ನು ಕೂಡ ನನಗೆ ಕೊಟ್ಟು ಬಿಡು" ಎನ್ನುತ್ತಿದ್ದಾನೆ. ಅವನು ಮಾತಿನಲ್ಲಿ ನನ್ನನ್ನು ಸೋಲಿಸಿಬಿಟ್ಟನು."

إِنَّ هَٰذَآ أَخِي لَهُۥ تِسۡعٞ وَتِسۡعُونَ نَعۡجَةٗ وَلِيَ
نَعۡجَةٞ وَٰحِدَةٞ فَقَالَ أَكۡفِلۡنِيهَا وَعَزَّنِي فِي
ٱلۡخِطَابِ ٢٣

24. ಅವರು (ದಾವೂದ್) ಹೇಳಿದರು: "ಅವನ ಹೆಣ್ಣುಕುರಿಗಳ ಜೊತೆಗೆ ನಿನ್ನ ಹೆಣ್ಣುಕುರಿಯನ್ನು ಸೇರಿಸಬೇಕೆಂದು ಬೇಡುವ ಮೂಲಕ ಅವನು ನಿನ್ನೊಡನೆ ಖಂಡಿತ ಅಕ್ರಮವೆಸಗಿದ್ದಾನೆ. ನಿಶ್ಚಯವಾಗಿಯೂ ಪಾಲುದಾರರಲ್ಲಿ ಹೆಚ್ಚಿನವರೂ (ಹೀಗೆಯೇ) ಪರಸ್ಪರ ಅತಿರೇಕವೆಸಗುತ್ತಾರೆ. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮ-ವೆಸಗುವವರು ಇದಕ್ಕೆ ಹೊರತಾಗಿದ್ದಾರೆ. ಆದರೆ ಅವರು ಬಹಳ ಕಡಿಮೆ ಜನರು ಮಾತ್ರ." ನಾವು ಅವರನ್ನು ಪರೀಕ್ಷಿಸಿದ್ದೆಂದು ದಾವೂದರಿಗೆ ಖಾತ್ರಿಯಾಯಿತು. ಆದ್ದರಿಂದ ಅವರು ತಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ಕ್ಷಮೆಯಾಚಿಸಿದರು ಮತ್ತು ಸಾಷ್ಟಾಂಗವೆರಗಿ ಪಶ್ಚಾತ್ತಾಪಪಟ್ಟರು.

قَالَ لَقَدۡ ظَلَمَكَ بِسُؤَالِ نَعۡجَتِكَ إِلَىٰ نِعَاجِهِۦۖ
وَإِنَّ كَثِيرٗا مِّنَ ٱلۡخُلَطَآءِ لَيَبۡغِي بَعۡضُهُمۡ عَلَىٰ
بَعۡضٍ إِلَّا ٱلَّذِينَ ءَامَنُواْ وَعَمِلُواْ ٱلصَّٰلِحَٰتِ
وَقَلِيلٞ مَّا هُمۡۗ وَظَنَّ دَاوُۥدُ أَنَّمَا فَتَنَّٰهُ فَٱسۡتَغۡفَرَ
رَبَّهُۥ وَخَرَّۤ رَاكِعٗاۤ وَأَنَابَ ۩ ٢٤

25. ಆಗ ನಾವು ಅವರನ್ನು ಕ್ಷಮಿಸಿದೆವು. ನಿಶ್ಚಯವಾಗಿಯೂ ಅವರಿಗೆ ನಮ್ಮ ಬಳಿ ಸಾಮೀಪ್ಯವಿದೆ ಮತ್ತು ಅತ್ಯುತ್ತಮವಾದ ಠಿಕಾಣಿಯಿದೆ.

فَغَفَرۡنَا لَهُۥ ذَٰلِكَۖ وَإِنَّ لَهُۥ عِندَنَا لَزُلۡفَىٰ
وَحُسۡنَ مَـَٔابٖ ٢٥

26. "ಓ ದಾವೂದ್! ನಿಶ್ಚಯವಾಗಿಯೂ ನಾವು ನಿಮ್ಮನ್ನು ಭೂಮಿಯಲ್ಲಿ ಪ್ರತಿನಿಧಿಯಾಗಿ ಮಾಡಿದ್ದೇವೆ. ಆದ್ದರಿಂದ ನೀವು ಜನರ ಮಧ್ಯೆ ನ್ಯಾಯಯುತವಾಗಿ ತೀರ್ಪು ನೀಡಿರಿ. ನೀವು ಸ್ವೇಚ್ಛೆಯನ್ನು ಹಿಂಬಾಲಿಸಬೇಡಿ. ಅದು ನಿಮ್ಮನ್ನು ಅಲ್ಲಾಹನ ಮಾರ್ಗದಿಂದ ತಪ್ಪಿಸಿಬಿಡುತ್ತದೆ. ಯಾರು ಅಲ್ಲಾಹನ ಮಾರ್ಗದಿಂದ ತಪ್ಪಿಹೋಗುತ್ತಾರೋ ಅವರು ವಿಚಾರಣಾ ದಿನವನ್ನು ಮರೆತ ಕಾರಣ ಅವರಿಗೆ ನಿಶ್ಚಯವಾಗಿಯೂ ಕಠಿಣವಾದ ಶಿಕ್ಷೆಯಿದೆ.

يَٰدَاوُۥدُ إِنَّا جَعَلۡنَٰكَ خَلِيفَةٗ فِي ٱلۡأَرۡضِ
فَٱحۡكُم بَيۡنَ ٱلنَّاسِ بِٱلۡحَقِّ وَلَا تَتَّبِعِ ٱلۡهَوَىٰ
فَيُضِلَّكَ عَن سَبِيلِ ٱللَّهِۚ إِنَّ ٱلَّذِينَ يَضِلُّونَ
عَن سَبِيلِ ٱللَّهِ لَهُمۡ عَذَابٞ شَدِيدُۢ بِمَا نَسُواْ
يَوۡمَ ٱلۡحِسَابِ ٢٦

27. ನಾವು ಆಕಾಶ, ಭೂಮಿ ಮತ್ತು ಅವುಗಳ ನಡುವೆಯಿರುವ ವಸ್ತುಗಳನ್ನು ವ್ಯರ್ಥವಾಗಿ ಸೃಷ್ಟಿಸಿಲ್ಲ. ಅದು ಸತ್ಯನಿಷೇಧಿಗಳ ಊಹೆಯಾಗಿದೆ. ಸತ್ಯನಿಷೇಧಿಗಳಿಗೆ ನರಕ ಶಿಕ್ಷೆಯ ವಿನಾಶ ಕಾದಿದೆ.

وَمَا خَلَقۡنَا ٱلسَّمَآءَ وَٱلۡأَرۡضَ وَمَا بَيۡنَهُمَا
بَٰطِلٗاۚ ذَٰلِكَ ظَنُّ ٱلَّذِينَ كَفَرُواْۚ فَوَيۡلٞ لِّلَّذِينَ
كَفَرُواْ مِنَ ٱلنَّارِ ٢٧

28. ನಾವು ಸತ್ಯವಿಶ್ವಾಸಿಗಳನ್ನು ಮತ್ತು ಸತ್ಕರ್ಮವೆಸಗಿದವರನ್ನು ಭೂಮಿಯಲ್ಲಿ ನಿರಂತರ ಕಿಡಿಗೇಡಿತನ ಹರಡುವವರಂತೆ ಮಾಡುವೆವೇ? ಅಥವಾ ನಾವು ದೇವಭಯವುಳ್ಳವರನ್ನು ದುಷ್ಕರ್ಮಿಗಳಂತೆ ಮಾಡುವೆವೇ?

أَمۡ نَجۡعَلُ ٱلَّذِينَ ءَامَنُواْ وَعَمِلُواْ ٱلصَّٰلِحَٰتِ
كَٱلۡمُفۡسِدِينَ فِي ٱلۡأَرۡضِ أَمۡ نَجۡعَلُ ٱلۡمُتَّقِينَ
كَٱلۡفُجَّارِ ٢٨

| | |
|---|---|
| 29. ಇದು ನಾವು ನಿಮಗೆ ಅವತೀರ್ಣಗೊಳಿಸಿದ ಸಮೃದ್ಧಪೂರ್ಣ ಗ್ರಂಥವಾಗಿದೆ. ಇದರಲ್ಲಿರುವ ವಚನಗಳ ಬಗ್ಗೆ ಅವರು ಆಲೋಚಿಸುವುದಕ್ಕಾಗಿ ಮತ್ತು ಬುದ್ಧಿವಂತರು ಉಪದೇಶ ಪಡೆಯುವುದಕ್ಕಾಗಿ. | كِتَٰبٌ أَنزَلۡنَٰهُ إِلَيۡكَ مُبَٰرَكٞ لِّيَدَّبَّرُوٓاْ ءَايَٰتِهِۦ وَلِيَتَذَكَّرَ أُوْلُواْ ٱلۡأَلۡبَٰبِ ٢٩ |
| 30. ನಾವು ದಾವೂದರಿಗೆ ಸುಲೈಮಾನರನ್ನು ದಯಪಾಲಿಸಿದೆವು. ಅತ್ಯುತ್ತಮ ದಾಸ! ಅವರು ಅತ್ಯಧಿಕ ಪಶ್ಚಾತ್ತಾಪಪಡುವವರಾಗಿದ್ದರು. | وَوَهَبۡنَا لِدَاوُۥدَ سُلَيۡمَٰنَۚ نِعۡمَ ٱلۡعَبۡدُ إِنَّهُۥٓ أَوَّابٌ ٣٠ |
| 31. ಸಂಜೆ ಅವರ ಮುಂದೆ ವೇಗವಾಗಿ ಓಡುವ ವಿಶಿಷ್ಟ ಕುದುರೆಗಳನ್ನು ಹಾಜರುಪಡಿಸಿದ ಸಂದರ್ಭ! | إِذۡ عُرِضَ عَلَيۡهِ بِٱلۡعَشِيِّ ٱلصَّٰفِنَٰتُ ٱلۡجِيَادُ ٣١ |
| 32. ಅವರು ಹೇಳಿದರು: "ನಾನು ನನ್ನ ಪರಿಪಾಲಕನ (ಅಲ್ಲಾಹನ) ಸ್ಮರಣೆಗಿಂತಲೂ ಈ ಕುದುರೆಗಳಿಗೆ ಪ್ರಾಶಸ್ತ್ಯ ನೀಡಿದೆನು; ಎಲ್ಲಿಯ-ವರೆಗೆಂದರೆ ಸೂರ್ಯ ಮುಳುಗುವ ತನಕ." | فَقَالَ إِنِّيٓ أَحۡبَبۡتُ حُبَّ ٱلۡخَيۡرِ عَن ذِكۡرِ رَبِّي حَتَّىٰ تَوَارَتۡ بِٱلۡحِجَابِ ٣٢ |
| 33. (ಅವರು ಹೇಳಿದರು): "ಅವುಗಳನ್ನು ನನ್ನ ಬಳಿಗೆ ಮರಳಿ ತನ್ನಿ." ನಂತರ ಅವರು (ಅವುಗಳ) ಕಣಕಾಲು ಮತ್ತು ಕತ್ತುಗಳನ್ನು ಸವರಲು ಆರಂಭಿಸಿದರು. | رُدُّوهَا عَلَيَّۖ فَطَفِقَ مَسۡحَۢا بِٱلسُّوقِ وَٱلۡأَعۡنَاقِ ٣٣ |
| 34. ನಾವು ಸುಲೈಮಾನರನ್ನು ಪರೀಕ್ಷಿಸಿದೆವು. ನಾವು ಅವರ ಸಿಂಹಾಸನದ ಮೇಲೆ ಒಂದು ದೇಹವನ್ನು ಹಾಕಿದೆವು. ನಂತರ ಅವರು ವಿನಮ್ರತೆಯಿಂದ ಮರಳಿದರು. | وَلَقَدۡ فَتَنَّا سُلَيۡمَٰنَ وَأَلۡقَيۡنَا عَلَىٰ كُرۡسِيِّهِۦ جَسَدٗا ثُمَّ أَنَابَ ٣٤ |
| 35. ಅವರು ಹೇಳಿದರು: "ನನ್ನ ಪರಿಪಾಲಕನೇ! ನನ್ನನ್ನು ಕ್ಷಮಿಸು. ನನ್ನ ಬಳಿಕ ಯಾರಿಗೂ ಹೊಂದಿಕೆಯಾಗದಂತಹ ಒಂದು ಸಾಮ್ರಾಜ್ಯವನ್ನು ನನಗೆ ಕರುಣಿಸು. ನಿಶ್ಚಯವಾಗಿಯೂ ನೀನು ಅತ್ಯಧಿಕ ಉದಾರಿಯಾಗಿರುವೆ." | قَالَ رَبِّ ٱغۡفِرۡ لِي وَهَبۡ لِي مُلۡكٗا لَّا يَنۢبَغِي لِأَحَدٖ مِّنۢ بَعۡدِيٓۖ إِنَّكَ أَنتَ ٱلۡوَهَّابُ ٣٥ |
| 36. ನಾವು ಅವರಿಗೆ ಗಾಳಿಯನ್ನು ಅಧೀನಗೊಳಿಸಿದೆವು. ಅದು ಅವರ ಆಜ್ಞೆಯಂತೆ ಅವರು ಬಯಸಿದ ಕಡೆಗೆ ಅವರನ್ನು ಮೃದುವಾಗಿ ಒಯ್ಯುತ್ತಿತ್ತು. | فَسَخَّرۡنَا لَهُ ٱلرِّيحَ تَجۡرِي بِأَمۡرِهِۦ رُخَآءً حَيۡثُ أَصَابَ ٣٦ |
| 37. ಕಟ್ಟಡ ನಿರ್ಮಾಣಗಾರರು ಮತ್ತು ಮುಳುಗುಗಾರರಾದ ಎಲ್ಲಾ ಶೈತಾನರನ್ನು (ನಾನು ಅವರಿಗೆ ಅಧೀನಗೊಳಿಸಿದೆವು). | وَٱلشَّيَٰطِينَ كُلَّ بَنَّآءٖ وَغَوَّاصٖ ٣٧ |
| 38. ಸಂಕೋಲೆಗಳಲ್ಲಿ ಬಂಧಿಸಲಾದ ಇತರ ಕೆಲವು (ಶೈತಾನರನ್ನೂ ಅಧೀನಗೊಳಿಸಿದೆವು). | وَءَاخَرِينَ مُقَرَّنِينَ فِي ٱلۡأَصۡفَادِ ٣٨ |
| 39. "ಇದು ನಮ್ಮ ಉಡುಗೊರೆಯಾಗಿದೆ. ನೀವು ಉಪಕಾರ ಮಾಡಿರಿ | هَٰذَا عَطَآؤُنَا فَٱمۡنُنۡ أَوۡ أَمۡسِكۡ |

ಅಥವಾ ತಡೆದುಕೊಳ್ಳಿರಿ. ಯಾವುದೇ ಲೆಕ್ಕ ನೀಡಬೇಕಾಗಿಲ್ಲ."[1]

بِغَيۡرِ حِسَابٖ ٣٩

---

40. ನಿಶ್ಚಯವಾಗಿಯೂ ಅವರಿಗೆ ನಮ್ಮ ಬಳಿ ಸಾಮೀಪ್ಯವಿದೆ ಮತ್ತು ಅತ್ಯುತ್ತಮವಾದ ಠಿಕಾಣಿಯಿದೆ.

وَإِنَّ لَهُۥ عِندَنَا لَزُلۡفَىٰ وَحُسۡنَ مَـَٔابٖ ٤٠

---

41. ನಮ್ಮ ದಾಸರಾದ ಅಯ್ಯೂಬರನ್ನು ಸ್ಮರಿಸಿರಿ. ಅವರು ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಕರೆದು ಪ್ರಾರ್ಥಿಸಿದ ಸಂದರ್ಭ: "ಶೈತಾನನು ನನಗೆ ಬಳಲಿಕೆ ಮತ್ತು ದುಃಖವುಂಟಾಗುವಂತೆ ಮಾಡಿದ್ದಾನೆ."

وَٱذۡكُرۡ عَبۡدَنَآ أَيُّوبَ إِذۡ نَادَىٰ رَبَّهُۥٓ أَنِّي مَسَّنِيَ
ٱلشَّيۡطَٰنُ بِنُصۡبٖ وَعَذَابٍ ٤١

---

42. (ನಾವು ಹೇಳಿದೆವು): "ನಿಮ್ಮ ಕಾಲಿನಿಂದ (ನೆಲಕ್ಕೆ) ಬಡಿಯಿರಿ. ಇದು ತಂಪಾದ ಸ್ನಾನದ ನೀರು ಮತ್ತು ಕುಡಿಯುವ ನೀರಾಗಿದೆ."[2]

ٱرۡكُضۡ بِرِجۡلِكَۖ هَٰذَا مُغۡتَسَلُۢ
بَارِدٞ وَشَرَابٞ ٤٢

---

43. ನಾವು ಅವರಿಗೆ ಅವರ ಸಂಪೂರ್ಣ ಕುಟುಂಬವನ್ನು ಮತ್ತು ಅದರೊಂದಿಗೆ ಅಷ್ಟೇ ಸಂಖ್ಯೆಯ ಇತರರನ್ನೂ ದಯಪಾಲಿಸಿದೆವು. ನಮ್ಮ ವಿಶೇಷ ದಯೆಯಾಗಿ ಮತ್ತು ಬುದ್ಧಿವಂತರಿಗೆ ಒಂದು ಉಪದೇಶವಾಗಿ.

وَوَهَبۡنَا لَهُۥٓ أَهۡلَهُۥ وَمِثۡلَهُم مَّعَهُمۡ رَحۡمَةٗ مِّنَّا
وَذِكۡرَىٰ لِأُوْلِي ٱلۡأَلۡبَٰبِ ٤٣

---

44. "ನೀವು ಒಂದು ಹಿಡಿ ಹುಲ್ಲನ್ನು ನಿಮ್ಮ ಕೈಯಲ್ಲಿ ಹಿಡಿದು ಅದರಿಂದ ಬಡಿಯಿರಿ. ನಿಮ್ಮ ಪ್ರತಿಜ್ಞೆಯನ್ನು ಉಲ್ಲಂಘಿಸಬೇಡಿ."[3] ನಿಶ್ಚಯವಾಗಿಯೂ ನಾವು ಅವರನ್ನು ಬಹಳ ಸಹಿಷ್ಣುತೆಯಿರುವ ದಾಸನಾಗಿ ಕಂಡೆವು. ಅತ್ಯುತ್ತಮ ದಾಸ! ಅವರು ಅತ್ಯಧಿಕ ಪಶ್ಚಾತ್ತಾಪಪಡುವವರಾಗಿದ್ದರು.

وَخُذۡ بِيَدِكَ ضِغۡثٗا فَٱضۡرِب بِّهِۦ وَلَا تَحۡنَثۡۗ إِنَّا
وَجَدۡنَٰهُ صَابِرٗاۚ نِّعۡمَ ٱلۡعَبۡدُ إِنَّهُۥٓ أَوَّابٞ ٤٤

---

45. ಶಕ್ತಿಶಾಲಿ ಮತ್ತು ದೂರದೃಷ್ಟಿಯುಳ್ಳ ನಮ್ಮ ದಾಸರಾದ ಇಬ್ರಾಹೀಮ್, ಇಸ್‌ಹಾಕ್ ಮತ್ತು ಯಾಕೂಬರನ್ನು ಸ್ಮರಿಸಿರಿ.

وَٱذۡكُرۡ عِبَٰدَنَآ إِبۡرَٰهِيمَ وَإِسۡحَٰقَ وَيَعۡقُوبَ أُوْلِي
ٱلۡأَيۡدِي وَٱلۡأَبۡصَٰرِ ٤٥

---

46. ನಾವು ಅವರನ್ನು ಒಂದು ವಿಶೇಷ ವಿಷಯಕ್ಕೆ ಅಂದರೆ ಪರಲೋಕದ ಸ್ಮರಣೆಯೊಂದಿಗೆ ಉತ್ಕೃಷ್ಟಗೊಳಿಸಿದೆವು.

إِنَّآ أَخۡلَصۡنَٰهُم بِخَالِصَةٖ ذِكۡرَى ٱلدَّارِ ٤٦

---

47. ನಿಶ್ಚಯವಾಗಿಯೂ ಅವರು ನಮ್ಮ ಬಳಿ ಆರಿಸಲಾದ ಮತ್ತು ಅತಿಶ್ರೇಷ್ಠ ಜನರಾಗಿದ್ದಾರೆ.

وَإِنَّهُمۡ عِندَنَا لَمِنَ ٱلۡمُصۡطَفَيۡنَ ٱلۡأَخۡيَارِ ٤٧

---

[1] ಈ ಮಹಾ ಸಾಮ್ರಾಜ್ಯವು ನಮ್ಮ ಉಡುಗೊರೆಯಾಗಿದೆ. ನೀವು ಬಯಸುವವರಿಗೆ ಇದನ್ನು ನೀಡಬಹುದು. ನೀವು ಬಯಸದವರಿಗೆ ನೀಡದೇ ಇರಬಹುದು. ಈ ಬಗ್ಗೆ ನಾವು ನಿಮ್ಮೊಡನೆ ಯಾವುದೇ ಲೆಕ್ಕ ಕೇಳುವುದಿಲ್ಲ.

[2] ಅಯ್ಯೂಬ್ (ಅವರ ಮೇಲೆ ಶಾಂತಿಯಿರಲಿ) ಕಾಲನ್ನು ನೆಲಕ್ಕೆ ಬಡಿದಾಗ, ಅಲ್ಲಿ ಒಂದು ಚಿಲುಮೆ ಚಿಮ್ಮಿ ಹರಿಯಿತು. ಅವರು ಅದರ ನೀರನ್ನು ಕುಡಿದಾಗ ಅವರ ಆಂತರಿಕ ರೋಗಗಳು ಗುಣವಾದವು ಮತ್ತು ಅದರಲ್ಲಿ ಸ್ನಾನ ಮಾಡಿದಾಗ ಹೊರಗಿನ ರೋಗಗಳು ಗುಣವಾದವು.

[3] ಅಯ್ಯೂಬ್ (ಅವರ ಮೇಲೆ ಶಾಂತಿಯಿರಲಿ) ರೋಗಿಯಾಗಿದ್ದಾಗ ಯಾವುದೋ ವಿಷಯದಲ್ಲಿ ಪತ್ನಿಯ ಮೇಲೆ ಸಿಟ್ಟಾಗಿ, ನಿನಗೆ ನೂರು ಏಟುಗಳನ್ನು ಬಾರಿಸುತ್ತೇನೆ ಎಂದು ಶಪಥ ಮಾಡಿದ್ದರು. ರೋಗ ಗುಣವಾದ ನಂತರ ನೂರು ತೆನೆಗಳಿರುವ ಹುಲ್ಲಿನ ಕಟ್ಟನ್ನು ತೆಗೆದುಕೊಂಡು ಒಂದು ಬಾರಿ ಹೊಡೆಯುವ ಮೂಲಕ ಶಪಥವನ್ನು ಈಡೇರಿಸಲು ಇಲ್ಲಿ ಹೇಳಲಾಗಿದೆ.

| | |
|---|---|
| 48. ಇಸ್ಮಾಈಲ್, ಅಲ್‌ಯಸಅ್, ಮತ್ತು ದುಲ್‌ಕಿಫ್ಲರನ್ನು ಸ್ಮರಿಸಿರಿ. ಅವರೆಲ್ಲರೂ ಅತಿಶ್ರೇಷ್ಠರಾಗಿದ್ದಾರೆ. | وَٱذۡكُرۡ إِسۡمَٰعِيلَ وَٱلۡيَسَعَ وَذَا ٱلۡكِفۡلِۖ وَكُلّٞ مِّنَ ٱلۡأَخۡيَارِ ﴿٤٨﴾ |
| 49. ಇದೊಂದು ಉಪದೇಶವಾಗಿದೆ. ನಿಶ್ಚಯವಾಗಿಯೂ ದೇವಭಯ-ವುಳ್ಳವರಿಗೆ ಅತ್ಯುತ್ತಮ ವಾಸಸ್ಥಳವಿದೆ. | هَٰذَا ذِكۡرٞۚ وَإِنَّ لِلۡمُتَّقِينَ لَحُسۡنَ مَـَٔابٖ ﴿٤٩﴾ |
| 50. ಶಾಶ್ವತ ವಾಸದ ಸ್ವರ್ಗೋದ್ಯಾನಗಳು. ಅವರಿಗೆ ಅದರ ದ್ವಾರಗಳನ್ನು ತೆರೆದಿಡಲಾಗಿದೆ. | جَنَّٰتِ عَدۡنٖ مُّفَتَّحَةٗ لَّهُمُ ٱلۡأَبۡوَٰبُ ﴿٥٠﴾ |
| 51. ಅಲ್ಲಿ ಅವರು ಒರಗಿ ಕುಳಿತು ಹಲವಾರು ವಿಧಗಳ ಹಣ್ಣುಗಳನ್ನು ಮತ್ತು ಪಾನೀಯಗಳಿಗೆ ಬೇಡಿಕೆಯಿಡುವರು. | مُتَّكِـِٔينَ فِيهَا يَدۡعُونَ فِيهَا بِفَٰكِهَةٖ كَثِيرَةٖ وَشَرَابٖ ﴿٥١﴾ |
| 52. ಅವರ ಬಳಿ ದೃಷ್ಟಿಗಳನ್ನು ನಿಯಂತ್ರಿಸುವ ಸಮಪ್ರಾಯದ ತರುಣಿಗಳಿರುವರು. | ۞وَعِندَهُمۡ قَٰصِرَٰتُ ٱلطَّرۡفِ أَتۡرَابٌ ﴿٥٢﴾ |
| 53. ಇದು ನಿಮಗೆ ವಿಚಾರಣೆಯ ದಿನಕ್ಕಾಗಿ ಮಾಡಲಾದ ವಾಗ್ದಾನವಾಗಿದೆ. | هَٰذَا مَا تُوعَدُونَ لِيَوۡمِ ٱلۡحِسَابِ ﴿٥٣﴾ |
| 54. ನಿಶ್ಚಯವಾಗಿಯೂ ಇದು ನಮ್ಮ ಕಡೆಯ ಉಪಜೀವನವಾಗಿದೆ. ಇದಕ್ಕೆ ಕೊನೆಯೆಂಬುದೇ ಇಲ್ಲ. | إِنَّ هَٰذَا لَرِزۡقُنَا مَا لَهُۥ مِن نَّفَادٍ ﴿٥٤﴾ |
| 55. ಇದು (ದೇವಭಯವುಳ್ಳವರ ಸ್ಥಿತಿಯಾಗಿದೆ). ನಿಶ್ಚಯವಾಗಿಯೂ ಅತಿರೇಕಿಗಳಿಗೆ ಅತಿಕೆಟ್ಟ ವಾಸಸ್ಥಳವಿದೆ. | هَٰذَاۚ وَإِنَّ لِلطَّٰغِينَ لَشَرَّ مَـَٔابٖ ﴿٥٥﴾ |
| 56. ನರಕಾಗ್ನಿ! ಅವರು ಅದನ್ನು ಪ್ರವೇಶಿಸುವರು. ಅದು ಅತಿ ನಿಕೃಷ್ಟ ವಾಸಸ್ಥಳವಾಗಿದೆ. | جَهَنَّمَ يَصۡلَوۡنَهَا فَبِئۡسَ ٱلۡمِهَادُ ﴿٥٦﴾ |
| 57. ಇದು (ಅವರ ಸ್ಥಿತಿಯಾಗಿದೆ). ಆದ್ದರಿಂದ ಅವರು ಅದರ ರುಚಿಯನ್ನು ನೋಡಲಿ. ಕುದಿಯುವ ನೀರು ಮತ್ತು ಕೀವು! | هَٰذَا فَلۡيَذُوقُوهُ حَمِيمٞ وَغَسَّاقٞ ﴿٥٧﴾ |
| 58. ಇದರ ಹೊರತಾಗಿ ಇನ್ನೂ ಅನೇಕ ವಿಧದ ಶಿಕ್ಷೆಗಳು! | وَءَاخَرُ مِن شَكۡلِهِۦٓ أَزۡوَٰجٌ ﴿٥٨﴾ |
| 59. "ಇದು ನಿಮ್ಮ ಜೊತೆಗೆ (ನರಕವನ್ನು) ಪ್ರವೇಶಿಸುವ ಒಂದು ಗುಂಪಾಗಿದೆ. ಅವರಿಗೆ ಸ್ವಾಗತವಿಲ್ಲ. ನಿಶ್ಚಯವಾಗಿಯೂ ಅವರು ನರಕವನ್ನು ಪ್ರವೇಶಿಸುವರು." | هَٰذَا فَوۡجٞ مُّقۡتَحِمٞ مَّعَكُمۡ لَا مَرۡحَبَۢا بِهِمۡۚ إِنَّهُمۡ صَالُواْ ٱلنَّارِ ﴿٥٩﴾ |
| 60. ಅವರು ಹೇಳುವರು: "ಅಲ್ಲ, ನಿಮಗೇ ಸ್ವಾಗತವಿಲ್ಲ. ನೀವೇ ಇದನ್ನು ನಮಗೆ ಮೊದಲು ತಂದಿಟ್ಟವರು. ಆ ವಾಸಸ್ಥಳವು ಬಹಳ ನಿಕೃಷ್ಟವಾಗಿದೆ!" | قَالُواْ بَلۡ أَنتُمۡ لَا مَرۡحَبَۢا بِكُمۡۖ أَنتُمۡ قَدَّمۡتُمُوهُ لَنَاۖ فَبِئۡسَ ٱلۡقَرَارُ ﴿٦٠﴾ |
| 61. ಅವರು ಹೇಳುವರು: "ನಮ್ಮ ಪರಿಪಾಲಕನೇ! ಇದನ್ನು ನಮಗೆ ತಂದಿಟ್ಟವರು ಯಾರೋ ಅವರಿಗೆ ನರಕದಲ್ಲಿ ಇಮ್ಮಡಿ ಶಿಕ್ಷೆಯನ್ನು ನೀಡು." | قَالُواْ رَبَّنَا مَن قَدَّمَ لَنَا هَٰذَا فَزِدۡهُ عَذَابٗا ضِعۡفٗا فِي ٱلنَّارِ ﴿٦١﴾ |

| | | |
|---|---|---|
| 62. | ಅವರು ಹೇಳುವರು: “ಇದೇನು? ನಾವು ಕೆಟ್ಟವರೆಂದು ಪರಿಗಣಿಸಿದ್ದ ಆ ಜನರು ನಮಗೆ ಕಾಣಿಸುತ್ತಿಲ್ಲವಲ್ಲ? | وَقَالُواْ مَا لَنَا لَا نَرَىٰ رِجَالٗا كُنَّا نَعُدُّهُم مِّنَ ٱلۡأَشۡرَارِ ٦٢ |
| 63. | ನಾವು ಅವರನ್ನು (ತಪ್ಪಾಗಿ) ತಮಾಷೆ ಮಾಡುತ್ತಿದ್ದೆವೋ? ಅಥವಾ ನಮ್ಮ ದೃಷ್ಟಿಯಿಂದ ಅವರು ತಪ್ಪಿಹೋಗಿದ್ದಾರೋ?” | أَتَّخَذۡنَٰهُمۡ سِخۡرِيًّا أَمۡ زَاغَتۡ عَنۡهُمُ ٱلۡأَبۡصَٰرُ ٦٣ |
| 64. | ನರಕವಾಸಿಗಳ ಈ ಜಗಳವು ಸತ್ಯವಾಗಿಯೂ ಸಂಭವಿಸಿಯೇ ತೀರುತ್ತದೆ. | إِنَّ ذَٰلِكَ لَحَقّٞ تَخَاصُمُ أَهۡلِ ٱلنَّارِ ٦٤ |
| 65. | ಹೇಳಿರಿ: “ನಾನೊಬ್ಬ ಮುನ್ನೆಚ್ಚರಿಕೆಗಾರ ಮಾತ್ರ. ಏಕೈಕನು ಮತ್ತು ಸರ್ವಾಧಿಕಾರಿಯಾದ ಅಲ್ಲಾಹನ ಹೊರತು ಆರಾಧನೆಗೆ ಅರ್ಹರಾದ ಬೇರೆ ದೇವರಿಲ್ಲ.” | قُلۡ إِنَّمَآ أَنَا۠ مُنذِرٞۖ وَمَا مِنۡ إِلَٰهٍ إِلَّا ٱللَّهُ ٱلۡوَٰحِدُ ٱلۡقَهَّارُ ٦٥ |
| 66. | ಅವನು ಭೂಮ್ಯಾಕಾಶಗಳ ಮತ್ತು ಅವುಗಳ ನಡುವೆಯಿರುವ ಎಲ್ಲಾ ವಸ್ತುಗಳ ಪರಿಪಾಲಕ. ಅವನು ಪ್ರಬಲನು ಮತ್ತು ಕ್ಷಮಿಸುವವನಾಗಿದ್ದಾನೆ. | رَبُّ ٱلسَّمَٰوَٰتِ وَٱلۡأَرۡضِ وَمَا بَيۡنَهُمَا ٱلۡعَزِيزُ ٱلۡغَفَّٰرُ ٦٦ |
| 67. | ಹೇಳಿರಿ: “ಇದು ಗಂಭೀರ ವಾರ್ತೆಯಾಗಿದೆ. | قُلۡ هُوَ نَبَؤٌاْ عَظِيمٌ ٦٧ |
| 68. | ನೀವು ಇದನ್ನು ಕಡೆಗಣಿಸುತ್ತಿದ್ದೀರಿ. | أَنتُمۡ عَنۡهُ مُعۡرِضُونَ ٦٨ |
| 69. | ಉಪರಿಲೋಕದ ದೇವದೂತರುಗಳು ತರ್ಕಿಸುತ್ತಿದ್ದಾಗ ನನಗೆ ಅವರ (ಸಂಭಾಷಣೆಗಳ) ಬಗ್ಗೆ ಯಾವುದೇ ತಿಳುವಳಿಕೆಯಿಲ್ಲ. | مَا كَانَ لِيَ مِنۡ عِلۡمِۭ بِٱلۡمَلَإِ ٱلۡأَعۡلَىٰٓ إِذۡ يَخۡتَصِمُونَ ٦٩ |
| 70. | ನಾನೊಬ್ಬ ಸ್ಪಷ್ಟ ಮುನ್ನೆಚ್ಚರಿಕೆಗಾರನೆಂದು ಮಾತ್ರ ನನಗೆ ದೇವವಾಣಿ ನೀಡಲಾಗುತ್ತಿದೆ.” | إِن يُوحَىٰٓ إِلَيَّ إِلَّآ أَنَّمَآ أَنَا۠ نَذِيرٞ مُّبِينٌ ٧٠ |
| 71. | ನಿಮ್ಮ ಪರಿಪಾಲಕನು (ಅಲ್ಲಾಹು) ದೇವದೂತರುಗಳೊಂದಿಗೆ ಹೇಳಿದ ಸಂದರ್ಭ: “ನಿಶ್ಚಯವಾಗಿಯೂ ನಾನು ಜೇಡಿ ಮಣ್ಣಿನಿಂದ ಒಬ್ಬ ಮನುಷ್ಯನನ್ನು ಸೃಷ್ಟಿಸುವೆನು. | إِذۡ قَالَ رَبُّكَ لِلۡمَلَٰٓئِكَةِ إِنِّي خَٰلِقُۢ بَشَرٗا مِّن طِينٖ ٧١ |
| 72. | ನಾನು ಅವನನ್ನು ರೂಪುಗೊಳಿಸಿ, ನನ್ನ ಆತ್ಮದಿಂದ ಅವನಿಗೆ ಊದಿದಾಗ ನೀವು ಅವನಿಗೆ ಸಾಷ್ಟಾಂಗವೆರಗಿರಿ.” | فَإِذَا سَوَّيۡتُهُۥ وَنَفَخۡتُ فِيهِ مِن رُّوحِي فَقَعُواْ لَهُۥ سَٰجِدِينَ ٧٢ |
| 73. | ಆಗ ದೇವದೂತರುಗಳೆಲ್ಲರೂ ಒಟ್ಟಾಗಿ ಸಾಷ್ಟಾಂಗವೆರಗಿದರು. | فَسَجَدَ ٱلۡمَلَٰٓئِكَةُ كُلُّهُمۡ أَجۡمَعُونَ ٧٣ |
| 74. | ಇಬ್ಲೀಸನ ಹೊರತು. ಅವನು ಅಹಂಕಾರ ತೋರಿದನು ಮತ್ತು ಸತ್ಯನಿಷೇಧಿಗಳಲ್ಲಿ ಸೇರಿದವನಾದನು. | إِلَّآ إِبۡلِيسَ ٱسۡتَكۡبَرَ وَكَانَ مِنَ ٱلۡكَٰفِرِينَ ٧٤ |
| 75. | ಅಲ್ಲಾಹು ಕೇಳಿದನು: “ಇಬ್ಲೀಸ್! ನಾನು ನನ್ನ ಕೈಯಿಂದ ಸೃಷ್ಟಿಸಿದವನಿಗೆ ಸಾಷ್ಟಾಂಗವೆರಗದಂತೆ ನಿನ್ನನ್ನು ತಡೆದದ್ದು ಏನು? ನೀನು ಅಹಂಕಾರ ತೋರಿದೆಯಾ? ಅಥವಾ ನೀನು ದರ್ಪ | قَالَ يَٰٓإِبۡلِيسُ مَا مَنَعَكَ أَن تَسۡجُدَ لِمَا خَلَقۡتُ بِيَدَيَّۖ أَسۡتَكۡبَرۡتَ أَمۡ كُنتَ مِنَ ٱلۡعَالِينَ ٧٥ |

ತೋರುವವರಲ್ಲಿ ಸೇರಿದೆಯಾ?”

76. ಇಬ್ಲೀಸ್ ಹೇಳಿದನು: “ನಾನೇ ಅವನಿಗಿಂತ ಶ್ರೇಷ್ಠ. ನೀನು ನನ್ನನ್ನು ಅಗ್ನಿಯಿಂದ ಸೃಷ್ಟಿಸಿರುವೆ ಮತ್ತು ಅವನನ್ನು ಜೇಡಿಮಣ್ಣಿನಿಂದ ಸೃಷ್ಟಿಸಿರುವೆ.”

قَالَ أَنَا۠ خَيۡرٞ مِّنۡهُ خَلَقۡتَنِي مِن نَّارٖ وَخَلَقۡتَهُۥ مِن طِينٖ ٧٦

77. ಅಲ್ಲಾಹು ಹೇಳಿದನು: “ಇಲ್ಲಿಂದ ಹೊರಟುಹೋಗು. ನಿಶ್ಚಯವಾಗಿಯೂ ನೀನು ಬಹಿಷ್ಕೃತನಾಗಿರುವೆ.

قَالَ فَٱخۡرُجۡ مِنۡهَا فَإِنَّكَ رَجِيمٞ ٧٧

78. ಖಂಡಿತವಾಗಿಯೂ ನನ್ನ ಶಾಪವು ಪ್ರತಿಫಲದ ದಿನದ ತನಕ ನಿನ್ನ ಮೇಲೆ ಇರಲಿದೆ.”

وَإِنَّ عَلَيۡكَ لَعۡنَتِيٓ إِلَىٰ يَوۡمِ ٱلدِّينِ ٧٨

79. ಇಬ್ಲೀಸ್ ಹೇಳಿದನು: “ನನ್ನ ಪರಿಪಾಲಕನೇ! ಅವರನ್ನು ಜೀವ ನೀಡಿ ಎಬ್ಬಿಸುವ ದಿನದವರೆಗೆ ನನಗೆ ಕಾಲಾವಕಾಶ ನೀಡು.”

قَالَ رَبِّ فَأَنظِرۡنِيٓ إِلَىٰ يَوۡمِ يُبۡعَثُونَ ٧٩

80. ಅಲ್ಲಾಹು ಹೇಳಿದನು: “ಸರಿ, ನೀನು ಕಾಲಾವಕಾಶ ನೀಡಲಾದವರಲ್ಲಿ ಸೇರಿರುವೆ.

قَالَ فَإِنَّكَ مِنَ ٱلۡمُنظَرِينَ ٨٠

81. ಆ ನಿಶ್ಚಿತ ಅವಧಿಯ ದಿನದ ತನಕ.”

إِلَىٰ يَوۡمِ ٱلۡوَقۡتِ ٱلۡمَعۡلُومِ ٨١

82. ಇಬ್ಲೀಸ್ ಹೇಳಿದನು: “ನಿನ್ನ ಪ್ರತಿಷ್ಠೆಯ ಮೇಲಾಣೆ! ನಿಶ್ಚಯವಾಗಿಯೂ ನಾನು ಅವರೆಲ್ಲರನ್ನೂ ದಾರಿತಪ್ಪಿಸುವೆನು.

قَالَ فَبِعِزَّتِكَ لَأُغۡوِيَنَّهُمۡ أَجۡمَعِينَ ٨٢

83. ಅವರಲ್ಲಿರುವ ನಿನ್ನ ನಿಷ್ಕಳಂಕ ದಾಸರ ಹೊರತು.”

إِلَّا عِبَادَكَ مِنۡهُمُ ٱلۡمُخۡلَصِينَ ٨٣

84. ಅಲ್ಲಾಹು ಹೇಳಿದನು: “ಇದೇ ಸತ್ಯ. ನಾನು ಸತ್ಯವನ್ನೇ ಹೇಳುವವನು.

قَالَ فَٱلۡحَقُّ وَٱلۡحَقَّ أَقُولُ ٨٤

85. ನಿಶ್ಚಯವಾಗಿಯೂ ನಿನ್ನನ್ನು ಮತ್ತು ಅವರ ಪೈಕಿ ನಿನ್ನನ್ನು ಹಿಂಬಾ-ಲಿಸಿದವರನ್ನೆಲ್ಲಾ ನಾನು ನರಕಾಗ್ನಿಯಲ್ಲಿ ತುಂಬಿಸುವೆನು.”

لَأَمۡلَأَنَّ جَهَنَّمَ مِنكَ وَمِمَّن تَبِعَكَ مِنۡهُمۡ أَجۡمَعِينَ ٨٥

86. ಹೇಳಿರಿ: “ನಾನು ಇದಕ್ಕಾಗಿ ನಿಮ್ಮೊಂದಿಗೆ ಯಾವುದೇ ಪ್ರತಿಫಲವನ್ನು ಬೇಡುವುದಿಲ್ಲ. ನಾನು ಏನನ್ನೂ ಸ್ವಯಂ ಕಲ್ಪಿಸಿ ಹೇಳುವುದಿಲ್ಲ.

قُلۡ مَآ أَسۡـَٔلُكُمۡ عَلَيۡهِ مِنۡ أَجۡرٖ وَمَآ أَنَا۠ مِنَ ٱلۡمُتَكَلِّفِينَ ٨٦

87. ಇದು ಸರ್ವಲೋಕದವರಿಗೆ ಒಂದು ಉಪದೇಶ ಮಾತ್ರವಾಗಿದೆ.

إِنۡ هُوَ إِلَّا ذِكۡرٞ لِّلۡعَٰلَمِينَ ٨٧

88. ಒಂದು ಅವಧಿಯ ನಂತರ ನೀವು ಇದರ ಸಮಾಚಾರವನ್ನು ಖಂಡಿತ ಅರ್ಥಮಾಡಿಕೊಳ್ಳುವಿರಿ.

وَلَتَعۡلَمُنَّ نَبَأَهُۥ بَعۡدَ حِينِۭ ٨٨

# 39. ಅಝ್ಝುಮರ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

| | | |
|---|---|---|
| 1. | ಈ ಗ್ರಂಥವು ಪ್ರಬಲನು ಮತ್ತು ವಿವೇಕಪೂರ್ಣನಾದ ಅಲ್ಲಾಹನಿಂದ ಅವತೀರ್ಣವಾಗಿದೆ. | تَنزِيلُ ٱلۡكِتَٰبِ مِنَ ٱللَّهِ ٱلۡعَزِيزِ ٱلۡحَكِيمِ ١ |
| 2. | ನಿಶ್ಚಯವಾಗಿಯೂ ನಾವು ಈ ಗ್ರಂಥವನ್ನು ನಿಮಗೆ ಸತ್ಯದೊಂದಿಗೆ ಅವತೀರ್ಣಗೊಳಿಸಿದ್ದೇವೆ. ಆದ್ದರಿಂದ ಧರ್ಮವನ್ನು ಅಲ್ಲಾಹನಿಗೆ ನಿಷ್ಕಳಂಕಗೊಳಿಸಿ ಅವನನ್ನು ಮಾತ್ರ ಆರಾಧಿಸಿರಿ. | إِنَّآ أَنزَلۡنَآ إِلَيۡكَ ٱلۡكِتَٰبَ بِٱلۡحَقِّ فَٱعۡبُدِ ٱللَّهَ مُخۡلِصٗا لَّهُ ٱلدِّينَ ٢ |
| 3. | ತಿಳಿಯಿರಿ! ನಿಷ್ಕಳಂಕವಾದ ಆರಾಧನೆಯು ಅಲ್ಲಾಹನಿಗೆ ಮಾತ್ರವಾಗಿರಬೇಕು. ಅಲ್ಲಾಹನನ್ನು ಬಿಟ್ಟು ಬೇರೆಯವರನ್ನು ರಕ್ಷಕರನ್ನಾಗಿ ಮಾಡಿಕೊಂಡವರು ಹೇಳುತ್ತಾರೆ: “ನಾವು ಅವರನ್ನು ಆರಾಧಿಸುವುದು ಅವರು ನಮ್ಮನ್ನು ಅಲ್ಲಾಹನಿಗೆ ಹತ್ತಿರಗೊಳಿಸುತ್ತಾರೆಂಬ ಕಾರಣದಿಂದಾಗಿದೆ.” ಅವರು ಯಾವ ವಿಷಯದಲ್ಲಿ ಭಿನ್ನಮತದಲ್ಲಿದ್ದಾರೋ ಆ ವಿಷಯದಲ್ಲಿ ನಿಶ್ಚಯವಾಗಿಯೂ ಅಲ್ಲಾಹು ಅವರ ಮಧ್ಯೆ ತೀರ್ಪು ನೀಡುವನು. ನಿಶ್ಚಯವಾಗಿಯೂ ಸುಳ್ಳು ಹೇಳುವ ಮತ್ತು ಕೃತಜ್ಞತಾಭಾವವಿಲ್ಲದ ಯಾರಿಗೂ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ. | أَلَا لِلَّهِ ٱلدِّينُ ٱلۡخَالِصُۚ وَٱلَّذِينَ ٱتَّخَذُواْ مِن دُونِهِۦٓ أَوۡلِيَآءَ مَا نَعۡبُدُهُمۡ إِلَّا لِيُقَرِّبُونَآ إِلَى ٱللَّهِ زُلۡفَىٰٓ إِنَّ ٱللَّهَ يَحۡكُمُ بَيۡنَهُمۡ فِي مَا هُمۡ فِيهِ يَخۡتَلِفُونَۗ إِنَّ ٱللَّهَ لَا يَهۡدِي مَنۡ هُوَ كَٰذِبٞ كَفَّارٞ ٣ |
| 4. | ಮಕ್ಕಳಿರಬೇಕೆಂಬುದು ಅಲ್ಲಾಹನ ಉದ್ದೇಶವಾಗಿದ್ದರೆ ಅವನ ಸೃಷ್ಟಿಗಳಲ್ಲಿ ಅವನು ಇಚ್ಛಿಸುವ ಯಾರನ್ನಾದರೂ ಅವನು ಆರಿಸುತ್ತಿದ್ದನು. ಅವನು ಪರಿಶುದ್ಧನು! ಅವನು ಏಕೈಕನು ಮತ್ತು ಸರ್ವಾಧಿಕಾರಿಯಾದ ಅಲ್ಲಾಹನಾಗಿದ್ದಾನೆ. | لَّوۡ أَرَادَ ٱللَّهُ أَن يَتَّخِذَ وَلَدٗا لَّٱصۡطَفَىٰ مِمَّا يَخۡلُقُ مَا يَشَآءُۚ سُبۡحَٰنَهُۥۖ هُوَ ٱللَّهُ ٱلۡوَٰحِدُ ٱلۡقَهَّارُ ٤ |
| 5. | ಅವನು ಭೂಮ್ಯಾಕಾಶಗಳನ್ನು ಸತ್ಯದೊಂದಿಗೆ ಸೃಷ್ಟಿಸಿದನು. ಅವನು ರಾತ್ರಿಯನ್ನು ಹಗಲಿನ ಮೇಲೆ ಸುತ್ತಿ ಹೊದಿಯುತ್ತಾನೆ ಮತ್ತು ಹಗಲನ್ನು ರಾತ್ರಿಯ ಮೇಲೆ ಸುತ್ತಿ ಹೊದಿಯುತ್ತಾನೆ. ಅವನು ಸೂರ್ಯ ಮತ್ತು ಚಂದ್ರನನ್ನು ಅಧೀನಗೊಳಿಸಿದ್ದಾನೆ. ಎಲ್ಲವೂ ಒಂದು ನಿಶ್ಚಿತ ಅವಧಿಯವರೆಗೆ ಚಲಿಸುತ್ತವೆ. ತಿಳಿಯಿರಿ! ಅವನು ಪ್ರಬಲನು ಮತ್ತು ಕ್ಷಮಿಸುವವನಾಗಿದ್ದಾನೆ. | خَلَقَ ٱلسَّمَٰوَٰتِ وَٱلۡأَرۡضَ بِٱلۡحَقِّۖ يُكَوِّرُ ٱلَّيۡلَ عَلَى ٱلنَّهَارِ وَيُكَوِّرُ ٱلنَّهَارَ عَلَى ٱلَّيۡلِۖ وَسَخَّرَ ٱلشَّمۡسَ وَٱلۡقَمَرَۖ كُلّٞ يَجۡرِي لِأَجَلٖ مُّسَمًّىۗ أَلَا هُوَ ٱلۡعَزِيزُ ٱلۡغَفَّٰرُ ٥ |
| 6. | ಅವನು ನಿಮ್ಮನ್ನು ಒಂದೇ ದೇಹದಿಂದ ಸೃಷ್ಟಿಸಿದನು. ನಂತರ ಅದರಿಂದ ಅದರ ಸಂಗಾತಿಯನ್ನು ಉಂಟುಮಾಡಿದನು. ಅವನು ನಿಮಗೆ ಜಾನುವಾರುಗಳಲ್ಲಿ ಎಂಟು ಜೋಡಿಗಳನ್ನು ಇಳಿಸಿಕೊಟ್ಟನು. ಅವನು ನಿಮ್ಮನ್ನು ನಿಮ್ಮ ತಾಯಂದಿರ | خَلَقَكُم مِّن نَّفۡسٖ وَٰحِدَةٖ ثُمَّ جَعَلَ مِنۡهَا زَوۡجَهَا وَأَنزَلَ لَكُم مِّنَ ٱلۡأَنۡعَٰمِ ثَمَٰنِيَةَ أَزۡوَٰجٖۚ يَخۡلُقُكُمۡ فِي بُطُونِ أُمَّهَٰتِكُمۡ خَلۡقٗا مِّنۢ بَعۡدِ |

خَلۡقٗا مِّنۢ بَعۡدِ خَلۡقٖ فِي ظُلُمَٰتٖ ثَلَٰثٖۚ ذَٰلِكُمُ ٱللَّهُ رَبُّكُمۡ لَهُ ٱلۡمُلۡكُۖ لَآ إِلَٰهَ إِلَّا هُوَۖ فَأَنَّىٰ تُصۡرَفُونَ ٦

ಉದರಗಳಲ್ಲಿ ಮೂರು ರೀತಿಯ ಕತ್ತಲೆಗಳೊಳಗೆ ಒಂದು ಹಂತದ ಬಳಿಕ ಮತ್ತೊಂದು ಹಂತವಾಗಿ ಸೃಷ್ಟಿಸುತ್ತಾನೆ. ಅವನೇ ನಿಮ್ಮ ಪರಿಪಾಲಕನಾದ ಅಲ್ಲಾಹು. ಸಾರ್ವಭೌಮತ್ವವು ಅವನಿಗೆ ಸೇರಿದ್ದು. ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ಆದರೂ ನೀವು (ಸತ್ಯದಿಂದ) ತಪ್ಪಿಹೋಗುವುದು ಹೇಗೆ?

---

إِن تَكۡفُرُواْ فَإِنَّ ٱللَّهَ غَنِيٌّ عَنكُمۡۖ وَلَا يَرۡضَىٰ لِعِبَادِهِ ٱلۡكُفۡرَۖ وَإِن تَشۡكُرُواْ يَرۡضَهُ لَكُمۡۗ وَلَا تَزِرُ وَازِرَةٞ وِزۡرَ أُخۡرَىٰۚ ثُمَّ إِلَىٰ رَبِّكُم مَّرۡجِعُكُمۡ فَيُنَبِّئُكُم بِمَا كُنتُمۡ تَعۡمَلُونَۚ إِنَّهُۥ عَلِيمُۢ بِذَاتِ ٱلصُّدُورِ ٧

7. ನೀವು ಕೃತಘ್ನತೆ ತೋರುವುದಾದರೆ ನಿಶ್ಚಯವಾಗಿಯೂ ಅಲ್ಲಾಹನಿಗೆ ನಿಮ್ಮ ಅಗತ್ಯವಿಲ್ಲ. ದಾಸರು ಕೃತಘ್ನರಾಗು- ವುದನ್ನು ಅವನು ಇಷ್ಟಪಡುವುದಿಲ್ಲ. ನೀವು ಕೃತಜ್ಞರಾಗು- ವುದಾದರೆ ಅವನು ಅದನ್ನು ನಿಮಗಾಗಿ ಇಷ್ಟಪಡುವನು. ಪಾಪಗಳ ಭಾರವನ್ನು ಹೊರುವವರು ಇತರರು ಮಾಡಿದ ಪಾಪಗಳ ಭಾರವನ್ನು ಹೊರುವುದಿಲ್ಲ. ನಂತರ ನಿಮ್ಮನ್ನು ನಿಮ್ಮ ಪರಿಪಾಲಕನ (ಅಲ್ಲಾಹನ) ಬಳಿಗೆ ಮರಳಿಸಲಾಗುವುದು. ಆಗ ನೀವು ಮಾಡುತ್ತಿದ್ದ ಕರ್ಮಗಳ ಬಗ್ಗೆ ಅವನು ನಿಮಗೆ ತಿಳಿಸಿಕೊಡುವನು. ನಿಶ್ಚಯವಾಗಿಯೂ ಅವನು ಹೃದಯಗಳಲ್ಲಿ- ರುವುದನ್ನು ತಿಳಿಯುತ್ತಾನೆ.

---

۞وَإِذَا مَسَّ ٱلۡإِنسَٰنَ ضُرّٞ دَعَا رَبَّهُۥ مُنِيبًا إِلَيۡهِ ثُمَّ إِذَا خَوَّلَهُۥ نِعۡمَةٗ مِّنۡهُ نَسِيَ مَا كَانَ يَدۡعُوٓاْ إِلَيۡهِ مِن قَبۡلُ وَجَعَلَ لِلَّهِ أَندَادٗا لِّيُضِلَّ عَن سَبِيلِهِۦۚ قُلۡ تَمَتَّعۡ بِكُفۡرِكَ قَلِيلًا إِنَّكَ مِنۡ أَصۡحَٰبِ ٱلنَّارِ ٨

8. ಮನುಷ್ಯನಿಗೆ ಏನಾದರೂ ತೊಂದರೆಯುಂಟಾದರೆ ಅವನು ತನ್ನ ಪರಿಪಾಲಕನ (ಅಲ್ಲಾಹನ) ಕಡೆಗೆ ತಿರುಗಿ ಅವನನ್ನು ಕರೆದು ಪ್ರಾರ್ಥಿಸುತ್ತಾನೆ. ನಂತರ ಅಲ್ಲಾಹು ಅವನಿಗೆ ತನ್ನ ಕಡೆಯ ಏನಾದರೂ ಅನುಗ್ರಹವನ್ನು ದಯಪಾಲಿಸಿದರೆ ಅವನು ಮೊದಲು ಯಾವುದಕ್ಕಾಗಿ ಪ್ರಾರ್ಥಿಸಿದ್ದನೋ ಅದನ್ನು ಅವನು ಮರೆತುಬಿಡುತ್ತಾನೆ ಮತ್ತು ಅಲ್ಲಾಹನಿಗೆ ಸರಿಸಮಾನರನ್ನು ನಿಶ್ಚಯಿಸಿ ಜನರನ್ನು ಅಲ್ಲಾಹನ ಮಾರ್ಗದಿಂದ ತಪ್ಪಿಸುತ್ತಾನೆ. ಹೇಳಿರಿ: "ನೀನು ನಿನ್ನ ಈ ಸತ್ಯನಿಷೇಧದಿಂದ ಸ್ವಲ್ಪ ಕಾಲದವರೆಗೆ ಆನಂದದಿಂದ ಜೀವಿಸು. ನಿಶ್ಚಯವಾಗಿಯೂ ನೀನು ನರಕವಾಸಿ- ಗಳಲ್ಲಿ ಸೇರಿಕೊಳ್ಳುವೆ."

---

أَمَّنۡ هُوَ قَٰنِتٌ ءَانَآءَ ٱلَّيۡلِ سَاجِدٗا وَقَآئِمٗا يَحۡذَرُ ٱلۡأٓخِرَةَ وَيَرۡجُواْ رَحۡمَةَ رَبِّهِۦۗ قُلۡ هَلۡ يَسۡتَوِي ٱلَّذِينَ يَعۡلَمُونَ وَٱلَّذِينَ لَا يَعۡلَمُونَۗ إِنَّمَا يَتَذَكَّرُ أُوْلُواْ ٱلۡأَلۡبَٰبِ ٩

9. ಯಾರು ರಾತ್ರಿಯ ಸಮಯವನ್ನು ಸಾಷ್ಟಾಂಗ ಮತ್ತು ನಮಾಝ್ ಮಾಡುತ್ತಾ (ಆರಾಧನೆಯಲ್ಲಿ) ಕಳೆಯುತ್ತಾನೋ, ಪರಲೋಕವನ್ನು ಭಯಪಡುತ್ತಾನೋ ಮತ್ತು ತನ್ನ ಪರಿಪಾಲಕನ (ಅಲ್ಲಾಹನ) ದಯೆಯನ್ನು ಆಶಿಸುತ್ತಾನೋ (ಇಂತಹವನು ಮತ್ತು ಇದಕ್ಕೆ ವಿರುದ್ಧವಾಗಿ ವರ್ತಿಸುವವನು ಸಮಾನರಾಗುವರೇ)? ಹೇಳಿರಿ: "ಜ್ಞಾನವುಳ್ಳವರು ಮತ್ತು ಜ್ಞಾನವಿಲ್ಲದವರು ಸಮಾನರೇ?" ಬುದ್ಧಿವಂತರು ಮಾತ್ರ ಉಪದೇಶವನ್ನು ಸ್ವೀಕರಿಸುತ್ತಾರೆ.

10. ಹೇಳಿರಿ: "ಓ ನನ್ನ ಸತ್ಯವಿಶ್ವಾಸಿ ದಾಸರೇ! ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಭಯಪಡಿರಿ. ಯಾರು ಈ ಐಹಿಕ ಜೀವನದಲ್ಲಿ ಒಳಿತು ಮಾಡುತ್ತಾರೋ ಅವರಿಗೆ ಒಳಿತಿದೆ. ಅಲ್ಲಾಹನ ಭೂಮಿಯು ವಿಶಾಲವಾಗಿದೆ. ನಿಶ್ಚಯವಾಗಿಯೂ ತಾಳ್ಮೆಯಿಂ-ದಿರುವವರಿಗೆ ಅವರ ಪ್ರತಿಫಲವನ್ನು ಲೆಕ್ಕವಿಲ್ಲದೆ ಪೂರ್ಣವಾಗಿ ನೀಡಲಾಗುವುದು."

قُلۡ يَٰعِبَادِ ٱلَّذِينَ ءَامَنُواْ ٱتَّقُواْ رَبَّكُمۡۚ لِلَّذِينَ أَحۡسَنُواْ فِي هَٰذِهِ ٱلدُّنۡيَا حَسَنَةٞۗ وَأَرۡضُ ٱللَّهِ وَٰسِعَةٌۗ إِنَّمَا يُوَفَّى ٱلصَّٰبِرُونَ أَجۡرَهُم بِغَيۡرِ حِسَابٖ ١٠

11. ಹೇಳಿರಿ: "ಆರಾಧನೆಯನ್ನು ಅಲ್ಲಾಹನಿಗೆ ನಿಷ್ಕಳಂಕಗೊಳಿಸಿ ಅವನನ್ನು ಮಾತ್ರ ಆರಾಧಿಸಬೇಕೆಂದು ನನಗೆ ಆಜ್ಞಾಪಿಸಲಾಗಿದೆ.

قُلۡ إِنِّيٓ أُمِرۡتُ أَنۡ أَعۡبُدَ ٱللَّهَ مُخۡلِصٗا لَّهُ ٱلدِّينَ ١١

12. ನಾನು ಶರಣಾದವರಲ್ಲಿ ಮೊದಲಿಗನಾಗಬೇಕೆಂದೂ ನನಗೆ ಆಜ್ಞಾಪಿಸಲಾಗಿದೆ."

وَأُمِرۡتُ لِأَنۡ أَكُونَ أَوَّلَ ٱلۡمُسۡلِمِينَ ١٢

13. ಹೇಳಿರಿ: "ನಾನು ನನ್ನ ಪರಿಪಾಲಕನ (ಅಲ್ಲಾಹನ) ಆಜ್ಞೋಲ್ಲಂಘನೆ ಮಾಡಿದರೆ ಒಂದು ಭಯಾನಕ ದಿನದ ಶಿಕ್ಷೆಯನ್ನು ನಿಶ್ಚಯವಾಗಿಯೂ ನಾನು ಭಯಪಡುತ್ತೇನೆ."

قُلۡ إِنِّيٓ أَخَافُ إِنۡ عَصَيۡتُ رَبِّي عَذَابَ يَوۡمٍ عَظِيمٖ ١٣

14. ಹೇಳಿರಿ: "ನಾನು ನನ್ನ ಆರಾಧನೆಯನ್ನು ಅಲ್ಲಾಹನಿಗೆ ನಿಷ್ಕಳಂಕಗೊಳಿಸಿ ಅವನನ್ನು ಮಾತ್ರ ಆರಾಧಿಸುತ್ತೇನೆ."

قُلِ ٱللَّهَ أَعۡبُدُ مُخۡلِصٗا لَّهُۥ دِينِي ١٤

15. ನೀವು ಅವನನ್ನು ಬಿಟ್ಟು ನಿಮಗೆ ಇಷ್ಟವಿರುವವರನ್ನು ಆರಾಧಿಸಿರಿ. ಹೇಳಿರಿ: "ಪುನರುತ್ಥಾನ ದಿನದಂದು ಯಾರು ಸ್ವಯಂ ತನ್ನನ್ನು ಮತ್ತು ತನ್ನ ಜನರನ್ನು ನಷ್ಟಹೊಂದುವಂತೆ ಮಾಡುತ್ತಾನೋ ಅವರೇ ನಷ್ಟಹೊಂದಿದವರು. ಅದೇ ಅತ್ಯಂತ ಸ್ಪಷ್ಟ ನಷ್ಟ."

فَٱعۡبُدُواْ مَا شِئۡتُم مِّن دُونِهِۦۗ قُلۡ إِنَّ ٱلۡخَٰسِرِينَ ٱلَّذِينَ خَسِرُوٓاْ أَنفُسَهُمۡ وَأَهۡلِيهِمۡ يَوۡمَ ٱلۡقِيَٰمَةِۗ أَلَا ذَٰلِكَ هُوَ ٱلۡخُسۡرَانُ ٱلۡمُبِينُ ١٥

16. ಅವರಿಗೆ ಅವರ ಮೇಲ್ಭಾಗದಲ್ಲಿ ಅಗ್ನಿಯ ಮೇಲ್ಕಟ್ಟುಗಳಿವೆ. ಅವರ ತಳಭಾಗದಲ್ಲೂ ಮೇಲ್ಕಟ್ಟುಗಳಿವೆ. ಅಲ್ಲಾಹು ತನ್ನ ದಾಸರನ್ನು ಇದೇ ಶಿಕ್ಷೆಯ ಬಗ್ಗೆ ಭಯಪಡಿಸುತ್ತಿದ್ದಾನೆ. ಓ ನನ್ನ ದಾಸರೇ! ನನ್ನನ್ನು ಭಯಪಡಿರಿ.

لَهُم مِّن فَوۡقِهِمۡ ظُلَلٞ مِّنَ ٱلنَّارِ وَمِن تَحۡتِهِمۡ ظُلَلٞۚ ذَٰلِكَ يُخَوِّفُ ٱللَّهُ بِهِۦ عِبَادَهُۥۚ يَٰعِبَادِ فَٱتَّقُونِ ١٦

17. ಯಾರು ಮಿಥ್ಯಾರಾಧ್ಯರ ಆರಾಧನೆಯನ್ನು ಬಿಟ್ಟು ಅಲ್ಲಾಹನ ಕಡೆಗೆ ವಿನಮ್ರವಾಗಿ ಮರಳುತ್ತಾರೋ ಅವರಿಗೆ ಸುವಾರ್ತೆಯಿದೆ. ನನ್ನ ದಾಸರಿಗೆ ಸುವಾರ್ತೆ ನೀಡಿರಿ.

وَٱلَّذِينَ ٱجۡتَنَبُواْ ٱلطَّٰغُوتَ أَن يَعۡبُدُوهَا وَأَنَابُوٓاْ إِلَى ٱللَّهِ لَهُمُ ٱلۡبُشۡرَىٰۚ فَبَشِّرۡ عِبَادِ ١٧

18. ಅವರು ಯಾರೆಂದರೆ, ಮಾತುಗಳಿಗೆ ಕಿವಿಗೊಡುವವರು ಮತ್ತು ಅದರ ಅತ್ಯುತ್ತಮ ಭಾಗವನ್ನು ಅನುಸರಿಸುವವರು. ಇವರೇ ಅಲ್ಲಾಹನಿಂದ ಮಾರ್ಗದರ್ಶನ ಪಡೆದವರು ಮತ್ತು ಇವರೇ ಬುದ್ಧಿವಂತರು.

ٱلَّذِينَ يَسۡتَمِعُونَ ٱلۡقَوۡلَ فَيَتَّبِعُونَ أَحۡسَنَهُۥٓۚ أُوْلَٰٓئِكَ ٱلَّذِينَ هَدَىٰهُمُ ٱللَّهُۖ وَأُوْلَٰٓئِكَ هُمۡ أُوْلُواْ ٱلۡأَلۡبَٰبِ ١٨

19. ಯಾರ ಮೇಲೆ ಶಿಕ್ಷೆಯ ವಚನ ಖಾತ್ರಿಯಾಗಿದೆಯೋ (ಅವನಿಗೆ ಸಹಾಯ ಮಾಡಲು ನಿಮಗೆ ಸಾಧ್ಯವೇ)? ನರಕದಲ್ಲಿರುವವನನ್ನು ರಕ್ಷಿಸಲು ನಿಮಗೆ ಸಾಧ್ಯವೇ?

أَفَمَنْ حَقَّ عَلَيْهِ كَلِمَةُ ٱلْعَذَابِ أَفَأَنتَ تُنقِذُ مَن فِى ٱلنَّارِ ﴿١٩﴾

20. ಯಾರು ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಭಯಪಡುತ್ತಾರೋ ಅವರಿಗೆ ಮಹಡಿಗಳಿವೆ. ಅವುಗಳ ಮೇಲೆಯೂ ಮಹಡಿಗಳನ್ನು ನಿರ್ಮಿಸಲಾಗಿವೆ. ಅವುಗಳ ತಳಭಾಗದಿಂದ ನದಿಗಳು ಹರಿಯುತ್ತವೆ. ಅದು ಅಲ್ಲಾಹನ ವಾಗ್ದಾನವಾಗಿದೆ. ಅಲ್ಲಾಹು ವಾಗ್ದಾನವನ್ನು ಉಲ್ಲಂಘಿಸುವುದಿಲ್ಲ.

لَٰكِنِ ٱلَّذِينَ ٱتَّقَوْا۟ رَبَّهُمْ لَهُمْ غُرَفٌ مِّن فَوْقِهَا غُرَفٌ مَّبْنِيَّةٌ تَجْرِى مِن تَحْتِهَا ٱلْأَنْهَٰرُ ۖ وَعْدَ ٱللَّهِ لَا يُخْلِفُ ٱللَّهُ ٱلْمِيعَادَ ﴿٢٠﴾

21. ಅಲ್ಲಾಹು ಆಕಾಶದಿಂದ ಮಳೆ ಸುರಿಸುವುದನ್ನು ನೀವು ನೋಡಿಲ್ಲವೇ? ನಂತರ ಅದನ್ನು ಭೂಮಿಯಲ್ಲಿರುವ ತೊರೆಗಳಿಗೆ ತಲುಪಿಸುತ್ತಾನೆ. ನಂತರ ಅದರಿಂದ ತರತರಹದ ಬಣ್ಣಗಳಿರುವ ಬೆಳೆಗಳನ್ನು ಉತ್ಪಾದಿಸುತ್ತಾನೆ. ನಂತರ ಅದು ಒಣಗಿ ಹಳದಿಯಾಗಿ ಮಾರ್ಪಡುವುದನ್ನು ನೀವು ಕಾಣುತ್ತೀರಿ. ನಂತರ ಅವನು ಅದನ್ನು ಕಸಕಡ್ಡಿಗಳಾಗಿ ಮಾಡುತ್ತಾನೆ. ನಿಶ್ಚಯವಾಗಿಯೂ ಬುದ್ಧಿವಂತರಿಗೆ ಅದರಲ್ಲಿ ಉಪದೇಶವಿದೆ.

أَلَمْ تَرَ أَنَّ ٱللَّهَ أَنزَلَ مِنَ ٱلسَّمَآءِ مَآءً فَسَلَكَهُۥ يَنَٰبِيعَ فِى ٱلْأَرْضِ ثُمَّ يُخْرِجُ بِهِۦ زَرْعًا مُّخْتَلِفًا أَلْوَٰنُهُۥ ثُمَّ يَهِيجُ فَتَرَىٰهُ مُصْفَرًّا ثُمَّ يَجْعَلُهُۥ حُطَٰمًا ۚ إِنَّ فِى ذَٰلِكَ لَذِكْرَىٰ لِأُو۟لِى ٱلْأَلْبَٰبِ ﴿٢١﴾

22. ಅಲ್ಲಾಹು ಯಾರ ಹೃದಯವನ್ನು ಇಸ್ಲಾಮಿಗಾಗಿ ತೆರೆದುಕೊಟ್ಟು, ನಂತರ ಅವನು ತನ್ನ ಪರಿಪಾಲಕನ (ಅಲ್ಲಾಹನ) ಕಡೆಯ ಬೆಳಕಿನಲ್ಲಿರುತ್ತಾನೋ (ಅವನು ಹೃದಯವು ಕಠೋರವಾದವನಂತೆ ಆಗುವನೇ?) ಅಲ್ಲಾಹನ ಸ್ಮರಣೆಯಿಂದ ದೂರ ಸರಿದು ಹೃದಯಗಳು ಕಠೋರವಾದವರು ಯಾರೋ ಅವರಿಗೆ ವಿನಾಶ ಕಾದಿದೆ. ಅವರು ಸ್ಪಷ್ಟವಾದ ದುರ್ಮಾರ್ಗದಲ್ಲಿದ್ದಾರೆ.

أَفَمَن شَرَحَ ٱللَّهُ صَدْرَهُۥ لِلْإِسْلَٰمِ فَهُوَ عَلَىٰ نُورٍ مِّن رَّبِّهِۦ ۚ فَوَيْلٌ لِّلْقَٰسِيَةِ قُلُوبُهُم مِّن ذِكْرِ ٱللَّهِ ۚ أُو۟لَٰٓئِكَ فِى ضَلَٰلٍ مُّبِينٍ ﴿٢٢﴾

23. ಅಲ್ಲಾಹು ಅತ್ಯುತ್ತಮ ವಚನಗಳನ್ನು ಅವತೀರ್ಣಗೊಳಿಸಿದ್ದಾನೆ. ಅಂದರೆ ಪರಸ್ಪರ ಹೋಲಿಕೆಯಿರುವ ಮತ್ತು ಪುನರಾವರ್ತನೆಯಾಗುವ ವಚನಗಳಿರುವ ಒಂದು ಗ್ರಂಥವನ್ನು. ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಭಯಪಡುವವರ ಚರ್ಮಗಳು ಅದರಿಂದ ರೋಮಾಂಚನಗೊಳ್ಳುತ್ತವೆ. ನಂತರ ಅವರ ದೇಹ ಮತ್ತು ಹೃದಯಗಳು ಅಲ್ಲಾಹನ ಸ್ಮರಣೆಗಾಗಿ ಮೃದುವಾಗುತ್ತವೆ. ಅದು ಅಲ್ಲಾಹನ ಮಾರ್ಗದರ್ಶನ. ಅವನು ಅದರ ಮೂಲಕ ಅವನು ಇಚ್ಛಿಸುವವರನ್ನು ಸನ್ಮಾರ್ಗಕ್ಕೆ ಸೇರಿಸುತ್ತಾನೆ. ಅಲ್ಲಾಹು ಯಾರನ್ನು ದಾರಿತಪ್ಪಿಸುತ್ತಾನೋ ಅವನಿಗೆ ದಾರಿ ತೋರಿಸುವವರು ಯಾರೂ ಇಲ್ಲ.

ٱللَّهُ نَزَّلَ أَحْسَنَ ٱلْحَدِيثِ كِتَٰبًا مُّتَشَٰبِهًا مَّثَانِىَ تَقْشَعِرُّ مِنْهُ جُلُودُ ٱلَّذِينَ يَخْشَوْنَ رَبَّهُمْ ثُمَّ تَلِينُ جُلُودُهُمْ وَقُلُوبُهُمْ إِلَىٰ ذِكْرِ ٱللَّهِ ۚ ذَٰلِكَ هُدَى ٱللَّهِ يَهْدِى بِهِۦ مَن يَشَآءُ ۚ وَمَن يُضْلِلِ ٱللَّهُ فَمَا لَهُۥ مِنْ هَادٍ ﴿٢٣﴾

24. ಯಾರು ಪುನರುತ್ಥಾನ ದಿನದ ಕೆಟ್ಟ ಶಿಕ್ಷೆಗೆ ತನ್ನ ಮುಖವನ್ನೇ ಗುರಾಣಿಯಾಗಿ ಮಾಡಿಕೊಳ್ಳುತ್ತಾನೋ (ಅವನು ಅದರಿಂದ ಪಾರಾಗುವವನಿಗೆ ಸಮಾನನಾಗುವನೋ?) "ನೀವು ಮಾಡಿದ ಕರ್ಮಗಳ ರುಚಿಯನ್ನು ನೋಡಿರಿ" ಎಂದು ಆ ಅಕ್ರಮಿಗಳೊಡನೆ ಹೇಳಲಾಗುವುದು.

أَفَمَن يَتَّقِي بِوَجْهِهِۦ سُوٓءَ ٱلْعَذَابِ يَوْمَ ٱلْقِيَٰمَةِۚ وَقِيلَ لِلظَّٰلِمِينَ ذُوقُواْ مَا كُنتُمْ تَكْسِبُونَ ٢٤

25. ಅವರಿಗಿಂತ ಮೊದಲಿನವರೂ ಸತ್ಯವನ್ನು ನಿಷೇಧಿಸಿದ್ದರು. ಆಗ ಅವರು ನಿರೀಕ್ಷಿಸದ ದಿಕ್ಕಿನಿಂದ ಶಿಕ್ಷೆಯು ಅವರ ಮೇಲೆರಗಿತು.

كَذَّبَ ٱلَّذِينَ مِن قَبْلِهِمْ فَأَتَىٰهُمُ ٱلْعَذَابُ مِنْ حَيْثُ لَا يَشْعُرُونَ ٢٥

26. ಹೀಗೆ ಇಹಲೋಕ ಜೀವನದಲ್ಲೇ ಅಲ್ಲಾಹು ಅವರಿಗೆ ಅವಮಾನದ ರುಚಿ ನೋಡುವಂತೆ ಮಾಡಿದನು. ಪರಲೋಕದ ಶಿಕ್ಷೆಯಂತೂ ಅತ್ಯಂತ ಘೋರವಾಗಿದೆ. ಅವರು ಅದನ್ನು ತಿಳಿಯುತ್ತಿದ್ದರೆ!

فَأَذَاقَهُمُ ٱللَّهُ ٱلْخِزْيَ فِي ٱلْحَيَوٰةِ ٱلدُّنْيَاۖ وَلَعَذَابُ ٱلْءَاخِرَةِ أَكْبَرُۚ لَوْ كَانُواْ يَعْلَمُونَ ٢٦

27. ನಿಶ್ಚಯವಾಗಿಯೂ ನಾವು ಈ ಕುರ್‌ಆನ್‌ನಲ್ಲಿ ಜನರಿಗೋಸ್ಕರ ಎಲ್ಲ ತರಹದ ಉದಾಹರಣೆಗಳನ್ನು ವಿವರಿಸಿದ್ದೇವೆ. ಅವರು ಉಪದೇಶವನ್ನು ಸ್ವೀಕರಿಸುವುದಕ್ಕಾಗಿ.

وَلَقَدْ ضَرَبْنَا لِلنَّاسِ فِي هَٰذَا ٱلْقُرْءَانِ مِن كُلِّ مَثَلٖ لَّعَلَّهُمْ يَتَذَكَّرُونَ ٢٧

28. ಇದು ಅರಬ್ಬಿ ಭಾಷೆಯಲ್ಲಿರುವ ಕುರ್‌ಆನ್. ಅದರಲ್ಲಿ ಯಾವುದೇ ವಕ್ರತೆಗಳಿಲ್ಲ. ಅವರು ದೇವಭಯವುಳ್ಳವರಾಗುವುದಕ್ಕಾಗಿ.

قُرْءَانًا عَرَبِيًّا غَيْرَ ذِي عِوَجٖ لَّعَلَّهُمْ يَتَّقُونَ ٢٨

29. ಅಲ್ಲಾಹು ಒಂದು ಉದಾಹರಣೆಯನ್ನು ನೀಡುತ್ತಾನೆ. ಪರಸ್ಪರ ಕಚ್ಚಾಡುವ ಹಲವು ಪಾಲುದಾರರಿಗೆ ಗುಲಾಮನಾಗಿರುವ ಒಬ್ಬ ವ್ಯಕ್ತಿಮತ್ತು ಒಬ್ಬನೇ ಯಜಮಾನನಿಗೆ ಗುಲಾಮನಾಗಿರುವ ಇನ್ನೊಬ್ಬ ವ್ಯಕ್ತಿ. ಇವರಿಬ್ಬರು ಹೋಲಿಕೆಯಲ್ಲಿ ಸಮಾನರಾಗುವರೇ? ಅಲ್ಲಾಹನಿಗೆ ಸರ್ವಸ್ತುತಿ! ಆದರೆ ಅವರಲ್ಲಿ ಹೆಚ್ಚಿನವರೂ ತಿಳಿಯುವುದಿಲ್ಲ.[1]

ضَرَبَ ٱللَّهُ مَثَلٗا رَّجُلٗا فِيهِ شُرَكَآءُ مُتَشَٰكِسُونَ وَرَجُلٗا سَلَمٗا لِّرَجُلٍ هَلْ يَسْتَوِيَانِ مَثَلًاۚ ٱلْحَمْدُ لِلَّهِۚ بَلْ أَكْثَرُهُمْ لَا يَعْلَمُونَ ٢٩

30. ನಿಶ್ಚಯವಾಗಿಯೂ ನೀವು ನಿಧನರಾಗುವಿರಿ ಮತ್ತು ಅವರು ಕೂಡ ನಿಧನರಾಗುವರು.

إِنَّكَ مَيِّتٞ وَإِنَّهُم مَّيِّتُونَ ٣٠

31. ನಂತರ ನೀವೆಲ್ಲರೂ ಪುನರುತ್ಥಾನ ದಿನದಂದು ನಿಮ್ಮ ಪರಿಪಾಲಕನ (ಅಲ್ಲಾಹನ) ಮುಂದೆ ತರ್ಕಿಸುವಿರಿ.

ثُمَّ إِنَّكُمْ يَوْمَ ٱلْقِيَٰمَةِ عِندَ رَبِّكُمْ تَخْتَصِمُونَ ٣١

32. ಅಲ್ಲಾಹನ ಮೇಲೆ ಸುಳ್ಳು ಹೇಳಿದವನಿಗಿಂತ ಮತ್ತು ಸತ್ಯವು ತನ್ನ ಬಳಿಗೆ ಬಂದಾಗ ಅದನ್ನು ನಿಷೇಧಿಸಿದವನಿಗಿಂತ ದೊಡ್ಡ ಅಕ್ರಮಿ

فَمَنْ أَظْلَمُ مِمَّن كَذَبَ عَلَى ٱللَّهِ وَكَذَّبَ بِٱلصِّدْقِ إِذْ جَآءَهُۥٓۚ أَلَيْسَ فِي جَهَنَّمَ مَثْوٗى

[1] ಅಲ್ಲಾಹು ಇಲ್ಲಿ ಬಹುದೇವವಿಶ್ವಾಸಿ ಮತ್ತು ಏಕದೇವವಿಶ್ವಾಸಿಯ ಬಗ್ಗೆ ತಿಳಿಸುತ್ತಿದ್ದಾನೆ. ಹಲವು ಪಾಲುದಾರರಿಗೆ ಗುಲಾಮನಾಗಿರುವ ವ್ಯಕ್ತಿ ಎಂದರೆ ಬಹುದೇವವಿಶ್ವಾಸಿ. ಇವನಿಗೆ ಅನೇಕ ದೇವರುಗಳಿದ್ದಾರೆ. ಎಲ್ಲರ ಆಜ್ಞೆಗಳನ್ನು ಅವನು ಪಾಲಿಸಬೇಕಾಗಿದೆ. ಒಬ್ಬನೇ ಯಜಮಾನನಿಗೆ ಗುಲಾಮನಾಗಿರುವ ವ್ಯಕ್ತಿಯೆಂದರೆ ಏಕದೇವವಿಶ್ವಾಸಿ.

ಯಾರು? ನರಕದಲ್ಲಿ ಸತ್ಯನಿಷೇಧಿಗಳಿಗೆ ಸ್ಥಳವಿಲ್ಲವೇ? | لِّلْكَٰفِرِينَ ﴿٣٢﴾

33. ಸತ್ಯಧರ್ಮವನ್ನು ತಂದವರು ಮತ್ತು ಅದರಲ್ಲಿ ವಿಶ್ವಾಸವಿಟ್ಟವರು ಯಾರೋ ಅವರೇ ದೇವಭಯವುಳ್ಳವರು. | وَٱلَّذِى جَآءَ بِٱلصِّدْقِ وَصَدَّقَ بِهِۦٓ أُو۟لَٰٓئِكَ هُمُ ٱلْمُتَّقُونَ ﴿٣٣﴾

34. ಅವರಿಗೆ ಅವರು ಇಚ್ಛಿಸುವುದೆಲ್ಲವೂ ಅವರ ಪರಿಪಾಲಕನ (ಅಲ್ಲಾಹನ) ಬಳಿಯಿದೆ. ಅದು ಸಜ್ಜನರಿಗೆ ದೊರೆಯುವ ಪ್ರತಿಫಲವಾಗಿದೆ. | لَهُم مَّا يَشَآءُونَ عِندَ رَبِّهِمْ ۚ ذَٰلِكَ جَزَآءُ ٱلْمُحْسِنِينَ ﴿٣٤﴾

35. ಅಲ್ಲಾಹು ಅವರು ಮಾಡಿರುವ ಕೆಟ್ಟ ಕರ್ಮಗಳನ್ನು ಅಳಿಸುವುದಕ್ಕಾಗಿ ಮತ್ತು ಅವರು ಮಾಡಿರುವ ಉತ್ತಮ ಕರ್ಮಗಳಿಗೆ ಅತ್ಯುತ್ತಮ ಪ್ರತಿಫಲವನ್ನು ನೀಡುವುದಕ್ಕಾಗಿ. | لِيُكَفِّرَ ٱللَّهُ عَنْهُمْ أَسْوَأَ ٱلَّذِى عَمِلُوا۟ وَيَجْزِيَهُمْ أَجْرَهُم بِأَحْسَنِ ٱلَّذِى كَانُوا۟ يَعْمَلُونَ ﴿٣٥﴾

36. ಅಲ್ಲಾಹು ಅವನ ದಾಸನಿಗೆ ಸಾಕಾಗುವುದಿಲ್ಲವೇ? ಅವರು ಅಲ್ಲಾಹನಲ್ಲದವರ ಬಗ್ಗೆ ಹೇಳಿ ನಿಮ್ಮನ್ನು ಹೆದರಿಸುತ್ತಾರೆ. ಅಲ್ಲಾಹು ಯಾರನ್ನು ದಾರಿತಪ್ಪಿಸುತ್ತಾನೋ ಅವನಿಗೆ ಸನ್ಮಾರ್ಗ ತೋರಿಸುವವರು ಯಾರೂ ಇಲ್ಲ. | أَلَيْسَ ٱللَّهُ بِكَافٍ عَبْدَهُۥ ۖ وَيُخَوِّفُونَكَ بِٱلَّذِينَ مِن دُونِهِۦ ۚ وَمَن يُضْلِلِ ٱللَّهُ فَمَا لَهُۥ مِنْ هَادٍ ﴿٣٦﴾

37. ಅಲ್ಲಾಹು ಯಾರನ್ನು ಸನ್ಮಾರ್ಗದಲ್ಲಿ ಸೇರಿಸುತ್ತಾನೋ ಅವನನ್ನು ದಾರಿತಪ್ಪಿಸಲು ಯಾರಿಗೂ ಸಾಧ್ಯವಿಲ್ಲ. ಅಲ್ಲಾಹು ಪ್ರಬಲನು ಮತ್ತು ಪ್ರತೀಕಾರ ಪಡೆಯುವವನಲ್ಲವೇ? | وَمَن يَهْدِ ٱللَّهُ فَمَا لَهُۥ مِن مُّضِلٍّ ۗ أَلَيْسَ ٱللَّهُ بِعَزِيزٍ ذِى ٱنتِقَامٍ ﴿٣٧﴾

38. "ಭೂಮ್ಯಾಕಾಶಗಳನ್ನು ಸೃಷ್ಟಿಸಿದ್ದು ಯಾರು?" ಎಂದು ನೀವು ಅವರೊಡನೆ ಕೇಳಿದರೆ ಅವರು ಖಂಡಿತವಾಗಿಯೂ "ಅಲ್ಲಾಹು" ಎಂದು ಹೇಳುತ್ತಾರೆ. ಕೇಳಿರಿ: "ಹಾಗಾದರೆ ಅಲ್ಲಾಹನನ್ನು ಬಿಟ್ಟು ನೀವು ಕರೆದು ಪ್ರಾರ್ಥಿಸುತ್ತಿರುವ ದೇವರುಗಳ ಬಗ್ಗೆ ನೀವು ಯೋಚಿಸಿದ್ದೀರಾ? ಅಲ್ಲಾಹು ನನಗೆ ಏನಾದರೂ ತೊಂದರೆ ನೀಡಲು ಬಯಸಿದರೆ ಆ ತೊಂದರೆಯನ್ನು ನಿವಾರಿಸಲು ಅವರಿಗೆ ಸಾಧ್ಯವೇ? ಅಥವಾ ಅವನು ನನಗೆ ದಯೆ ತೋರಲು ಬಯಸಿದರೆ ಅವನ ದಯೆಯನ್ನು ತಡೆಯಲು ಅವರಿಗೆ ಸಾಧ್ಯವೇ?" ಹೇಳಿರಿ: "ನನಗೆ ಅಲ್ಲಾಹು ಸಾಕು. ಭರವಸೆಯಿಡುವವರು ಅವನಲ್ಲಿಯೇ ಭರವಸೆಯಿಡಲಿ." | وَلَئِن سَأَلْتَهُم مَّنْ خَلَقَ ٱلسَّمَٰوَٰتِ وَٱلْأَرْضَ لَيَقُولُنَّ ٱللَّهُ ۚ قُلْ أَفَرَءَيْتُم مَّا تَدْعُونَ مِن دُونِ ٱللَّهِ إِنْ أَرَادَنِىَ ٱللَّهُ بِضُرٍّ هَلْ هُنَّ كَٰشِفَٰتُ ضُرِّهِۦٓ أَوْ أَرَادَنِى بِرَحْمَةٍ هَلْ هُنَّ مُمْسِكَٰتُ رَحْمَتِهِۦ ۚ قُلْ حَسْبِىَ ٱللَّهُ ۖ عَلَيْهِ يَتَوَكَّلُ ٱلْمُتَوَكِّلُونَ ﴿٣٨﴾

39. ಹೇಳಿರಿ: "ಓ ನನ್ನ ಜನರೇ! ನೀವು ನಿಮ್ಮ ಸ್ಥಾನದಲ್ಲಿ ಕಾರ್ಯ ನಿರ್ವಹಿಸಿರಿ. ನಿಶ್ಚಯವಾಗಿಯೂ ನಾನೂ ಕಾರ್ಯ ನಿರ್ವಹಿಸುತ್ತೇನೆ. ನೀವು ಸದ್ಯವೇ ತಿಳಿಯುವಿರಿ. | قُلْ يَٰقَوْمِ ٱعْمَلُوا۟ عَلَىٰ مَكَانَتِكُمْ إِنِّى عَٰمِلٌ ۖ فَسَوْفَ تَعْلَمُونَ ﴿٣٩﴾

40. ಯಾರಿಗೆ ಅವಮಾನಗೊಳಿಸುವಂತಹ ಶಿಕ್ಷೆಯು ಬರಲಿದೆ ಮತ್ತು ಯಾರ ಮೇಲೆ ಶಾಶ್ವತ (ಪರಲೋಕದ) ಶಿಕ್ಷೆ ಎರಗಲಿದೆಯೆಂದು." | مَن يَأْتِيهِ عَذَابٌ يُخْزِيهِ وَيَحِلُّ عَلَيْهِ عَذَابٌ مُّقِيمٌ ﴿٤٠﴾

41. ನಿಶ್ಚಯವಾಗಿಯೂ ನಾವು ಮನುಷ್ಯರಿಗೋಸ್ಕರ ಈ ಗ್ರಂಥವನ್ನು ನಿಮಗೆ ಸತ್ಯದೊಂದಿಗೆ ಅವತೀರ್ಣಗೊಳಿಸಿದ್ದೇವೆ. ಆದ್ದರಿಂದ ಯಾರಾದರೂ ಸನ್ಮಾರ್ಗವನ್ನು ಸ್ವೀಕರಿಸಿದರೆ ಅವನು ಅವನ ಒಳಿತಿಗಾಗಿಯೇ ಅದನ್ನು ಸ್ವೀಕರಿಸುತ್ತಾನೆ. ಯಾರಾದರೂ ದುರ್ಮಾರ್ಗವನ್ನು ಆರಿಸಿದರೆ ಅವನು ಅವನ ಕೆಡುಕಿಗಾಗಿಯೇ ಅದನ್ನು ಆರಿಸುತ್ತಾನೆ. ನಿಮಗೆ ಅವರ ಮೇಲೆ ಯಾವುದೇ ಅಧಿಕಾರವಿಲ್ಲ.

إِنَّآ أَنزَلۡنَا عَلَيۡكَ ٱلۡكِتَٰبَ لِلنَّاسِ بِٱلۡحَقِّۖ فَمَنِ ٱهۡتَدَىٰ فَلِنَفۡسِهِۦۖ وَمَن ضَلَّ فَإِنَّمَا يَضِلُّ عَلَيۡهَاۖ وَمَآ أَنتَ عَلَيۡهِم بِوَكِيلٍ ٤١

42. ಅಲ್ಲಾಹು ಆತ್ಮಗಳನ್ನು ಅವು ಮರಣಹೊಂದುವ ಸಮಯದಲ್ಲಿ ಮತ್ತು ಮರಣವು ವಿಧಿಸಲ್ಪಡದ ಆತ್ಮಗಳನ್ನು ಅವುಗಳ ನಿದ್ದೆಯ ಸಮಯದಲ್ಲಿ ವಶಪಡಿಸುತ್ತಾನೆ. ನಂತರ ಮರಣವು ವಿಧಿಸಲಾದ ಆತ್ಮಗಳನ್ನು ಅವನು ಹಿಡಿದಿಟ್ಟುಕೊಳ್ಳುತ್ತಾನೆ ಮತ್ತು ಉಳಿದವುಗಳನ್ನು ಒಂದು ನಿಗದಿತ ಅವಧಿಯವರೆಗೆ ಬಿಟ್ಟುಬಿಡುತ್ತಾನೆ. ನಿಶ್ಚಯವಾಗಿಯೂ ಇದರಲ್ಲಿ ಆಲೋಚಿಸುವ ಜನರಿಗೆ ದೃಷ್ಟಾಂತಗಳಿವೆ.

ٱللَّهُ يَتَوَفَّى ٱلۡأَنفُسَ حِينَ مَوۡتِهَا وَٱلَّتِي لَمۡ تَمُتۡ فِي مَنَامِهَاۖ فَيُمۡسِكُ ٱلَّتِي قَضَىٰ عَلَيۡهَا ٱلۡمَوۡتَ وَيُرۡسِلُ ٱلۡأُخۡرَىٰٓ إِلَىٰٓ أَجَلٖ مُّسَمًّىۚ إِنَّ فِي ذَٰلِكَ لَأٓيَٰتٖ لِّقَوۡمٖ يَتَفَكَّرُونَ ٤٢

43. ಅವರು ಅಲ್ಲಾಹನನ್ನು ಬಿಟ್ಟು ಇತರರನ್ನು ಶಿಫಾರಸುಗಾರರ-ನ್ನಾಗಿ ಸ್ವೀಕರಿಸಿದ್ದಾರೆಯೇ? ಹೇಳಿರಿ: “ಅವರ (ಶಿಫಾರಸುಗಾರರ) ಅಧೀನದಲ್ಲಿ ಏನೂ ಇಲ್ಲದಿದ್ದರೂ ಮತ್ತು ಅವರು ಆಲೋಚಿಸ-ದವರಾಗಿದ್ದರೂ ಸಹ (ನೀವು ಅವರನ್ನು ಶಿಫಾರಸುಗಾರರನ್ನಾಗಿ ಸ್ವೀಕರಿಸುವಿರಾ)?”

أَمِ ٱتَّخَذُواْ مِن دُونِ ٱللَّهِ شُفَعَآءَۚ قُلۡ أَوَلَوۡ كَانُواْ لَا يَمۡلِكُونَ شَيۡـٔٗا وَلَا يَعۡقِلُونَ ٤٣

44. ಹೇಳಿರಿ: “ಶಿಫಾರಸು ಸಂಪೂರ್ಣವಾಗಿ ಅಲ್ಲಾಹನ ಅಧೀನದಲ್ಲಿದೆ. ಭೂಮ್ಯಾಕಾಶಗಳ ಸಾರ್ವಭೌಮತ್ವವು ಅವನಿಗೆ ಸೇರಿದ್ದು. ನಂತರ ನಿಮ್ಮನ್ನು ಅವನ ಬಳಿಗೇ ಮರಳಿಸಲಾಗುವುದು.”

قُل لِّلَّهِ ٱلشَّفَٰعَةُ جَمِيعٗاۖ لَّهُۥ مُلۡكُ ٱلسَّمَٰوَٰتِ وَٱلۡأَرۡضِۖ ثُمَّ إِلَيۡهِ تُرۡجَعُونَ ٤٤

45. ಅಲ್ಲಾಹನನ್ನು ಮಾತ್ರ ಪ್ರಸ್ತಾಪಿಸಲಾದಾಗ ಪರಲೋಕದಲ್ಲಿ ವಿಶ್ವಾಸವಿಡದವರ ಹೃದಯಗಳಲ್ಲಿ ದ್ವೇಷವುಂಟಾಗುತ್ತದೆ. ಅವನನ್ನು ಬಿಟ್ಟು ಇತರರನ್ನು ಪ್ರಸ್ತಾಪಿಸಲಾದರೆ ಅಗೋ! ಅವರು ಸಂತೋಷಪಡುತ್ತಾರೆ.

وَإِذَا ذُكِرَ ٱللَّهُ وَحۡدَهُ ٱشۡمَأَزَّتۡ قُلُوبُ ٱلَّذِينَ لَا يُؤۡمِنُونَ بِٱلۡأٓخِرَةِۖ وَإِذَا ذُكِرَ ٱلَّذِينَ مِن دُونِهِۦٓ إِذَا هُمۡ يَسۡتَبۡشِرُونَ ٤٥

46. ಹೇಳಿರಿ: “ಓ ಭೂಮ್ಯಾಕಾಶಗಳ ಸೃಷ್ಟಿಕರ್ತನಾದ ಅಲ್ಲಾಹನೇ! ದೃಶ್ಯ-ಅದೃಶ್ಯಗಳನ್ನು ತಿಳಿದವನೇ! ನಿನ್ನ ದಾಸರು ಭಿನ್ನಮತ-ದಲ್ಲಿರುವ ವಿಷಯಗಳ ಬಗ್ಗೆ ನೀನು ಅವರ ನಡುವೆ ತೀರ್ಪು ನೀಡುವೆ.”

قُلِ ٱللَّهُمَّ فَاطِرَ ٱلسَّمَٰوَٰتِ وَٱلۡأَرۡضِ عَٰلِمَ ٱلۡغَيۡبِ وَٱلشَّهَٰدَةِ أَنتَ تَحۡكُمُ بَيۡنَ عِبَادِكَ فِي مَا كَانُواْ فِيهِ يَخۡتَلِفُونَ ٤٦

47. ನಿಶ್ಚಯವಾಗಿಯೂ ಸತ್ಯನಿಷೇಧಿಗಳ ಬಳಿ ಭೂಮಿಯಲ್ಲಿರುವು-ದೆಲ್ಲವೂ ಮತ್ತು ಅದರಷ್ಟೇ ಬೇರೆಯೂ ಇದ್ದಿದ್ದರೆ, ಪುನರುತ್ಥಾನ ದಿನದ ಕೆಟ್ಟ ಶಿಕ್ಷೆಯಿಂದ ಪಾರಾಗಲು ಅವರು ಅವೆಲ್ಲವನ್ನೂ ಪರಿಹಾರವಾಗಿ ನೀಡುತ್ತಿದ್ದರು. ಅವರು ಭಾವಿಸಿರದಂತಹ ಅನೇಕ ವಿಷಯಗಳು ಅಲ್ಲಾಹನ ಕಡೆಯಿಂದ ಅವರಿಗೆ ಬಹಿರಂಗವಾಗುವುವು.

وَلَوْ أَنَّ لِلَّذِينَ ظَلَمُواْ مَا فِي ٱلْأَرْضِ جَمِيعًا وَمِثْلَهُۥ مَعَهُۥ لَٱفْتَدَوْاْ بِهِۦ مِن سُوٓءِ ٱلْعَذَابِ يَوْمَ ٱلْقِيَٰمَةِۚ وَبَدَا لَهُم مِّنَ ٱللَّهِ مَا لَمْ يَكُونُواْ يَحْتَسِبُونَ ﴿٤٧﴾

48. ಅವರು ಮಾಡಿದ ಕರ್ಮಗಳ ದುಷ್ಪರಿಣಾಮಗಳು ಅವರಿಗೆ ಬಹಿರಂಗವಾಗುವುವು. ಅವರು ಏನನ್ನು ತಮಾಷೆ ಮಾಡುತ್ತಿದ್ದರೋ ಅದು ಅವರನ್ನು ಆವರಿಸಿಕೊಳ್ಳುವುದು.

وَبَدَا لَهُمْ سَيِّـَٔاتُ مَا كَسَبُواْ وَحَاقَ بِهِم مَّا كَانُواْ بِهِۦ يَسْتَهْزِءُونَ ﴿٤٨﴾

49. ಮನುಷ್ಯನಿಗೆ ತೊಂದರೆಯುಂಟಾದರೆ ಅವನು ನಮ್ಮನ್ನು ಕರೆದು ಪ್ರಾರ್ಥಿಸುತ್ತಾನೆ. ನಂತರ ನಾವು ಅವನಿಗೆ ನಮ್ಮ ಕಡೆಯ ಏನಾದರೂ ಅನುಗ್ರಹವನ್ನು ದಯಪಾಲಿಸಿದರೆ, ಅವನು ಹೇಳುತ್ತಾನೆ: “ಇದು ನನ್ನ ಜ್ಞಾನದ ಕಾರಣದಿಂದ ನನಗೆ ನೀಡಲಾಗಿದೆ.” ಅಲ್ಲ, ವಾಸ್ತವವಾಗಿ ಅದೊಂದು ಪರೀಕ್ಷೆಯಾಗಿದೆ. ಆದರೆ ಅವರಲ್ಲಿ ಹೆಚ್ಚಿನವರು ತಿಳಿಯುವುದಿಲ್ಲ.

فَإِذَا مَسَّ ٱلْإِنسَٰنَ ضُرٌّ دَعَانَا ثُمَّ إِذَا خَوَّلْنَٰهُ نِعْمَةً مِّنَّا قَالَ إِنَّمَآ أُوتِيتُهُۥ عَلَىٰ عِلْمٍۭۚ بَلْ هِىَ فِتْنَةٌ وَلَٰكِنَّ أَكْثَرَهُمْ لَا يَعْلَمُونَ ﴿٤٩﴾

50. ಅವರಿಗಿಂತ ಮೊದಲಿನವರೂ ಹೀಗೆಯೇ ಹೇಳಿದ್ದರು. ಆದರೆ ಅವರು ಸಂಪಾದಿಸಿದ ಯಾವುದೂ ಅವರಿಗೆ ಪ್ರಯೋಜನವಾಗಲಿಲ್ಲ.

قَدْ قَالَهَا ٱلَّذِينَ مِن قَبْلِهِمْ فَمَآ أَغْنَىٰ عَنْهُم مَّا كَانُواْ يَكْسِبُونَ ﴿٥٠﴾

51. ಅವರು ಮಾಡಿದ ಕರ್ಮಗಳ ದುಷ್ಪರಿಣಾಮಗಳು ಅವರ ಮೇಲೆರಗಿದವು. ಅದೇ ರೀತಿ ಇವರಲ್ಲಿರುವ ಅಕ್ರಮಿಗಳು ಮಾಡಿದ ಕರ್ಮಗಳ ದುಷ್ಪರಿಣಾಮಗಳು ಇವರ ಮೇಲೆರಗುವುವು. ಇವರಿಗೆ ನಮ್ಮನ್ನು ಸೋಲಿಸಲಾಗದು.

فَأَصَابَهُمْ سَيِّـَٔاتُ مَا كَسَبُواْۚ وَٱلَّذِينَ ظَلَمُواْ مِنْ هَٰٓؤُلَآءِ سَيُصِيبُهُمْ سَيِّـَٔاتُ مَا كَسَبُواْ وَمَا هُم بِمُعْجِزِينَ ﴿٥١﴾

52. ಅಲ್ಲಾಹು ಅವನು ಇಚ್ಛಿಸುವವರಿಗೆ ಉಪಜೀವನವನ್ನು ವಿಶಾಲ-ಗೊಳಿಸುತ್ತಾನೆ ಮತ್ತು ಅವನು ಇಚ್ಛಿಸುವವರಿಗೆ ಇಕ್ಕಟ್ಟುಗೊಳಿಸು-ತ್ತಾನೆಂದು ಅವರಿಗೆ ತಿಳಿದಿಲ್ಲವೇ? ನಿಶ್ಚಯವಾಗಿಯೂ ಸತ್ಯವಿಶ್ವಾ-ಸವಿಡುವ ಜನರಿಗೆ ಇದರಲ್ಲಿ ದೃಷ್ಟಾಂತಗಳಿವೆ.

أَوَلَمْ يَعْلَمُوٓاْ أَنَّ ٱللَّهَ يَبْسُطُ ٱلرِّزْقَ لِمَن يَشَآءُ وَيَقْدِرُۚ إِنَّ فِي ذَٰلِكَ لَأٓيَٰتٍ لِّقَوْمٍ يُؤْمِنُونَ ﴿٥٢﴾

53. ಹೇಳಿರಿ: “ಸ್ವಯಂ ಅತಿರೇಕವೆಸಗಿದ ನನ್ನ ದಾಸರೇ! ಅಲ್ಲಾಹನ ದಯೆಯ ಬಗ್ಗೆ ನಿರಾಶರಾಗಬೇಡಿ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲಾ ಪಾಪಗಳನ್ನೂ ಕ್ಷಮಿಸುತ್ತಾನೆ. ನಿಶ್ಚಯವಾಗಿಯೂ ಅವನು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.”

قُلْ يَٰعِبَادِىَ ٱلَّذِينَ أَسْرَفُواْ عَلَىٰٓ أَنفُسِهِمْ لَا تَقْنَطُواْ مِن رَّحْمَةِ ٱللَّهِۚ إِنَّ ٱللَّهَ يَغْفِرُ ٱلذُّنُوبَ جَمِيعًاۚ إِنَّهُۥ هُوَ ٱلْغَفُورُ ٱلرَّحِيمُ ﴿٥٣﴾

54. ನಿಮ್ಮ ಬಳಿಗೆ ಶಿಕ್ಷೆಯು ಬರುವುದಕ್ಕೆ ಮೊದಲು ನೀವು ನಿಮ್ಮ

وَأَنِيبُوٓاْ إِلَىٰ رَبِّكُمْ وَأَسْلِمُواْ لَهُۥ مِن قَبْلِ أَن

يَأۡتِيَكُمُ ٱلۡعَذَابُ ثُمَّ لَا تُنصَرُونَ ﴿٥٤﴾

ಪರಿಪಾಲಕನ (ಅಲ್ಲಾಹನ) ಕಡೆಗೆ ವಿನಮ್ರತೆಯಿಂದ ಮರಳಿರಿ ಮತ್ತು ಅವನಿಗೆ ಶರಣಾಗಿರಿ. ನಂತರ ನಿಮಗೆ ಸಹಾಯವು ಲಭ್ಯವಾಗುವುದಿಲ್ಲ.

---

وَٱتَّبِعُوٓاْ أَحۡسَنَ مَآ أُنزِلَ إِلَيۡكُم مِّن رَّبِّكُم مِّن قَبۡلِ أَن يَأۡتِيَكُمُ ٱلۡعَذَابُ بَغۡتَةٗ وَأَنتُمۡ لَا تَشۡعُرُونَ ﴿٥٥﴾

55. ನೀವು ನಿರೀಕ್ಷಿಸದ ರೀತಿಯಲ್ಲಿ ಶಿಕ್ಷೆಯು ಹಠಾತ್ತನೆ ನಿಮ್ಮ ಬಳಿಗೆ ಬರುವುದಕ್ಕೆ ಮೊದಲು ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ನಿಮಗೆ ಅವತೀರ್ಣವಾದ ಈ ಅತ್ಯುತ್ತಮ ಗ್ರಂಥವನ್ನು ಅನುಸರಿಸಿರಿ.

---

أَن تَقُولَ نَفۡسٞ يَٰحَسۡرَتَىٰ عَلَىٰ مَا فَرَّطتُ فِي جَنۢبِ ٱللَّهِ وَإِن كُنتُ لَمِنَ ٱلسَّٰخِرِينَ ﴿٥٦﴾

56. "ಅಯ್ಯೋ! ನನ್ನ ದುರ್ಗತಿಯೇ! ಅಲ್ಲಾಹನ ಹಕ್ಕಿನಲ್ಲಿ ನಾನು ಲೋಪವೆಸಗಿಬಿಟ್ಟೆನಲ್ಲ! ನಿಶ್ಚಯವಾಗಿಯೂ ನಾನು ತಮಾಷೆ ಮಾಡುವವರಲ್ಲಿ ಸೇರಿಬಿಟ್ಟೆನಲ್ಲ!" ಎಂದು ನೀವು ಹೇಳದಿರುವುದಕ್ಕಾಗಿ.

---

أَوۡ تَقُولَ لَوۡ أَنَّ ٱللَّهَ هَدَىٰنِي لَكُنتُ مِنَ ٱلۡمُتَّقِينَ ﴿٥٧﴾

57. ಅಥವಾ "ಅಲ್ಲಾಹು ನನ್ನನ್ನು ಸನ್ಮಾರ್ಗದಲ್ಲಿ ಸೇರಿಸಿದ್ದರೆ ನಾನು ದೇವಭಯವುಳ್ಳವರಲ್ಲಿ ಸೇರುತ್ತಿದ್ದೆ" ಎಂದು ಹೇಳದಿರುವುದಕ್ಕಾಗಿ.

---

أَوۡ تَقُولَ حِينَ تَرَى ٱلۡعَذَابَ لَوۡ أَنَّ لِي كَرَّةٗ فَأَكُونَ مِنَ ٱلۡمُحۡسِنِينَ ﴿٥٨﴾

58. ಅಥವಾ ಶಿಕ್ಷೆಯನ್ನು ನೇರವಾಗಿ ನೋಡುವಾಗ, "ನನಗೆ (ಇಹಲೋಕಕ್ಕೆ) ಮರಳುವ ಅವಕಾಶವಿರುತ್ತಿದ್ದರೆ ನಾನು ನೀತಿವಂತರಲ್ಲಿ ಸೇರುತ್ತಿದ್ದೆ" ಎಂದು ಹೇಳದಿರುವುದಕ್ಕಾಗಿ.

---

بَلَىٰ قَدۡ جَآءَتۡكَ ءَايَٰتِي فَكَذَّبۡتَ بِهَا وَٱسۡتَكۡبَرۡتَ وَكُنتَ مِنَ ٱلۡكَٰفِرِينَ ﴿٥٩﴾

59. ಹೌದು! ನಿಶ್ಚಯವಾಗಿಯೂ ನನ್ನ ವಚನಗಳು ನಿನ್ನ ಬಳಿಗೆ ಬಂದಿವೆ. ಆದರೆ ನೀನು ಅವುಗಳನ್ನು ನಿಷೇಧಿಸಿ ಅಹಂಕಾರ ತೋರಿದೆ. ನೀನು ಸತ್ಯನಿಷೇಧಿಗಳಲ್ಲಿ ಸೇರಿದವನಾಗಿದ್ದೆ.

---

وَيَوۡمَ ٱلۡقِيَٰمَةِ تَرَى ٱلَّذِينَ كَذَبُواْ عَلَى ٱللَّهِ وُجُوهُهُم مُّسۡوَدَّةٌۚ أَلَيۡسَ فِي جَهَنَّمَ مَثۡوٗى لِّلۡمُتَكَبِّرِينَ ﴿٦٠﴾

60. ಅಲ್ಲಾಹನ ಮೇಲೆ ಸುಳ್ಳು ಹೇಳಿದವರ ಮುಖಗಳು ಪುನರುತ್ಥಾನ ದಿನದಂದು ಕಪ್ಪಾಗಿರುವುದನ್ನು ನೀವು ನೋಡುವಿರಿ. ನರಕದಲ್ಲಿ ಅಹಂಕಾರಿಗಳಿಗೆ ಸ್ಥಳವಿಲ್ಲವೇ?

---

وَيُنَجِّي ٱللَّهُ ٱلَّذِينَ ٱتَّقَوۡاْ بِمَفَازَتِهِمۡ لَا يَمَسُّهُمُ ٱلسُّوٓءُ وَلَا هُمۡ يَحۡزَنُونَ ﴿٦١﴾

61. ದೇವಭಯವುಳ್ಳವರನ್ನು ಅಲ್ಲಾಹು ಅವರ ಯಶಸ್ಸಿನೊಂದಿಗೆ ಪಾರು ಮಾಡುವನು. ಯಾವುದೇ ರೀತಿಯ ವ್ಯಥೆಯು ಅವರನ್ನು ಸ್ಪರ್ಶಿಸುವುದಿಲ್ಲ. ಅವರು ದುಃಖಿಸುವುದೂ ಇಲ್ಲ.

---

ٱللَّهُ خَٰلِقُ كُلِّ شَيۡءٖۖ وَهُوَ عَلَىٰ كُلِّ شَيۡءٖ وَكِيلٞ ﴿٦٢﴾

62. ಅಲ್ಲಾಹು ಎಲ್ಲ ವಸ್ತುಗಳ ಸೃಷ್ಟಿಕರ್ತನಾಗಿದ್ದಾನೆ. ಅವನು ಎಲ್ಲ ವಸ್ತುಗಳ ಕಾರ್ಯನಿರ್ವಾಹಕನಾಗಿದ್ದಾನೆ.

---

لَّهُۥ مَقَالِيدُ ٱلسَّمَٰوَٰتِ وَٱلۡأَرۡضِۗ وَٱلَّذِينَ كَفَرُواْ بِـَٔايَٰتِ ٱللَّهِ أُوْلَٰٓئِكَ هُمُ ٱلۡخَٰسِرُونَ ﴿٦٣﴾

63. ಭೂಮ್ಯಾಕಾಶಗಳ ಕೀಲಿಗಳು ಅವನಿಗೆ ಸೇರಿದ್ದು. ಅಲ್ಲಾಹನ ವಚನಗಳನ್ನು ನಿಷೇಧಿಸಿದವರು ಯಾರೋ ಅವರೇ ನಷ್ಟ ಹೊಂದಿದವರು.

| | |
|---|---|
| 64. ಹೇಳಿರಿ: “ಓ ಅಜ್ಞಾನಿಗಳೇ! ನಾನು ಅಲ್ಲಾಹನನ್ನು ಬಿಟ್ಟು ಬೇರೆಯವರನ್ನು ಆರಾಧಿಸಬೇಕೆಂದು ನೀವು ನನಗೆ ಆದೇಶಿಸುತ್ತಿದ್ದೀರಾ?” | قُلۡ أَفَغَيۡرَ ٱللَّهِ تَأۡمُرُوٓنِّيٓ أَعۡبُدُ أَيُّهَا ٱلۡجَٰهِلُونَ ٦٤ |
| 65. ನೀವೇನಾದರೂ ಸಹಭಾಗಿತ್ವ (ಶಿರ್ಕ್) ಮಾಡಿದರೆ ನಿಶ್ಚಯವಾಗಿಯೂ ನಿಮ್ಮ ಕರ್ಮಗಳು ನಿಷ್ಫಲವಾಗುತ್ತವೆ ಮತ್ತು ನೀವು ನಷ್ಟ ಹೊಂದಿದವರಲ್ಲಿ ಸೇರುವಿರಿ ಎಂದು ನಿಮಗೂ ನಿಮಗಿಂತ ಮೊದಲಿನವರಿಗೂ ದೇವವಾಣಿ ನೀಡಲಾಗಿದೆ. | وَلَقَدۡ أُوحِيَ إِلَيۡكَ وَإِلَى ٱلَّذِينَ مِن قَبۡلِكَ لَئِنۡ أَشۡرَكۡتَ لَيَحۡبَطَنَّ عَمَلُكَ وَلَتَكُونَنَّ مِنَ ٱلۡخَٰسِرِينَ ٦٥ |
| 66. ಬದಲಿಗೆ, ನೀವು ಅಲ್ಲಾಹನನ್ನು ಮಾತ್ರ ಆರಾಧಿಸಿರಿ ಮತ್ತು ಕೃತಜ್ಞರಾಗಿರುವವರೊಂದಿಗೆ ಸೇರಿಕೊಳ್ಳಿರಿ. | بَلِ ٱللَّهَ فَٱعۡبُدۡ وَكُن مِّنَ ٱلشَّٰكِرِينَ ٦٦ |
| 67. ಅವರು ಅಲ್ಲಾಹನಿಗೆ ಮಹತ್ವ ನೀಡಬೇಕಾದ ರೀತಿಯಲ್ಲಿ ಮಹತ್ವ ನೀಡಲಿಲ್ಲ. ಪುನರುತ್ಥಾನ ದಿನದಂದು ಭೂಮಿಯು ಸಂಪೂರ್ಣವಾಗಿ ಅವನ ಮುಷ್ಠಿಯಲ್ಲಿರುತ್ತದೆ ಮತ್ತು ಆಕಾಶಗಳೆಲ್ಲವೂ ಅವನ ಬಲಗೈಯಲ್ಲಿ ಸುರುಳಿಯಾಗಿ-ರುತ್ತವೆ. ಅವರು ಸಹಾಭಾಗಿತ್ವ (ಶಿರ್ಕ್) ಮಾಡುವ ಎಲ್ಲಾ ವಸ್ತುಗಳಿಂದಲೂ ಅವನು ಎಷ್ಟೋ ಪರಿಶುದ್ಧನು ಮತ್ತು ಪರಮೋನ್ನತನಾಗಿದ್ದಾನೆ. | وَمَا قَدَرُواْ ٱللَّهَ حَقَّ قَدۡرِهِۦ وَٱلۡأَرۡضُ جَمِيعٗا قَبۡضَتُهُۥ يَوۡمَ ٱلۡقِيَٰمَةِ وَٱلسَّمَٰوَٰتُ مَطۡوِيَّٰتُۢ بِيَمِينِهِۦۚ سُبۡحَٰنَهُۥ وَتَعَٰلَىٰ عَمَّا يُشۡرِكُونَ ٦٧ |
| 68. ಕಹಳೆಯಲ್ಲಿ ಊದಲಾಗುವಾಗ ಆಕಾಶಗಳಲ್ಲಿ ಮತ್ತು ಭೂಮಿಯಲ್ಲಿರುವ ಎಲ್ಲರೂ ಸ್ಮೃತಿ ತಪ್ಪಿ ಬೀಳುವರು. ಅಲ್ಲಾಹು ಇಚ್ಛಿಸಿದವರ ಹೊರತು. ನಂತರ ಅದರಲ್ಲಿ (ಕಹಳೆಯಲ್ಲಿ) ಇನ್ನೊಮ್ಮೆ ಊದಲಾಗುವಾಗ ಅಗೋ! ಅವರು ಎದ್ದು ನಿಂತು ನೋಡುತ್ತಿರುವರು. | وَنُفِخَ فِي ٱلصُّورِ فَصَعِقَ مَن فِي ٱلسَّمَٰوَٰتِ وَمَن فِي ٱلۡأَرۡضِ إِلَّا مَن شَآءَ ٱللَّهُۖ ثُمَّ نُفِخَ فِيهِ أُخۡرَىٰ فَإِذَا هُمۡ قِيَامٞ يَنظُرُونَ ٦٨ |
| 69. ಭೂಮಿಯು ಅದರ ಪರಿಪಾಲಕನ (ಅಲ್ಲಾಹನ) ಪ್ರಭೆಯಿಂದ ಬೆಳಗುವುದು. ಕರ್ಮಪುಸ್ತಕಗಳನ್ನು ಇಡಲಾಗುವುದು, ಪ್ರವಾದಿಗಳನ್ನು ಹಾಗೂ ಸಾಕ್ಷಿಗಳನ್ನು ಕರೆ ತರಲಾಗುವುದು. ನಂತರ ಜನರ ಮಧ್ಯೆ ನ್ಯಾಯಯುತವಾಗಿ ತೀರ್ಪು ನೀಡಲಾಗುವುದು. ಅವರಿಗೆ ಯಾವುದೇ ಅನ್ಯಾಯವಾಗುವುದಿಲ್ಲ. | وَأَشۡرَقَتِ ٱلۡأَرۡضُ بِنُورِ رَبِّهَا وَوُضِعَ ٱلۡكِتَٰبُ وَجِاْيٓءَ بِٱلنَّبِيِّـۧنَ وَٱلشُّهَدَآءِ وَقُضِيَ بَيۡنَهُم بِٱلۡحَقِّ وَهُمۡ لَا يُظۡلَمُونَ ٦٩ |
| 70. ಪ್ರತಿಯೊಬ್ಬ ವ್ಯಕ್ತಿಗೂ ಅವನು ಮಾಡಿದ ಕರ್ಮಗಳ ಪ್ರತಿಫಲವನ್ನು ಪೂರ್ಣವಾಗಿ ನೀಡಲಾಗುವುದು. ಅವರು ಮಾಡುತ್ತಿದ್ದ ಕರ್ಮಗಳ ಬಗ್ಗೆ ಅವನು ಬಹಳ ಚೆನ್ನಾಗಿ ತಿಳಿದಿದ್ದಾನೆ. | وَوُفِّيَتۡ كُلُّ نَفۡسٖ مَّا عَمِلَتۡ وَهُوَ أَعۡلَمُ بِمَا يَفۡعَلُونَ ٧٠ |
| 71. ಸತ್ಯನಿಷೇಧಿಗಳನ್ನು ಗುಂಪು ಗುಂಪಾಗಿ ನರಕಕ್ಕೆ | وَسِيقَ ٱلَّذِينَ كَفَرُوٓاْ إِلَىٰ جَهَنَّمَ زُمَرًاۖ حَتَّىٰٓ إِذَا |

ಸಾಗಿಸಲಾಗುವುದು. ಎಲ್ಲಿಯವರೆಗೆಂದರೆ ಅವರು ಅದರ ಸಮೀಪಕ್ಕೆ ಬಂದಾಗ ಅದರ ಬಾಗಿಲುಗಳನ್ನು ತೆರೆಯಲಾಗುವುದು. ಅವುಗಳ ಕಾವಲುಗಾರರು ಕೇಳುವರು: "ನಿಮ್ಮ ಪರಿಪಾಲಕನ (ಅಲ್ಲಾಹನ) ವಚನಗಳನ್ನು ಓದಿಕೊಡುವ, ನಿಮ್ಮ ಈ ದಿನವನ್ನು ನೀವು ಸಂಧಿಸಲಿರುವಿರಿ ಎಂದು ನಿಮಗೆ ಎಚ್ಚರಿಕೆ ನೀಡುವ, ನಿಮ್ಮವರೇ ಆಗಿರುವ ಸಂದೇಶವಾಹಕರು ನಿಮ್ಮ ಬಳಿಗೆ ಬಂದಿರಲಿಲ್ಲವೇ?" ಅವರು ಹೇಳುವರು: "ಹೌದು! ಆದರೆ ಸತ್ಯನಿಷೇಧಿಗಳ ಮೇಲೆ ಶಿಕ್ಷೆಯ ವಚನವು ಖಾತ್ರಿಯಾಗಿ ಬಿಟ್ಟಿದೆ."

جَآءُوهَا فُتِحَتۡ أَبۡوَٰبُهَا وَقَالَ لَهُمۡ خَزَنَتُهَآ أَلَمۡ يَأۡتِكُمۡ رُسُلٞ مِّنكُمۡ يَتۡلُونَ عَلَيۡكُمۡ ءَايَٰتِ رَبِّكُمۡ وَيُنذِرُونَكُمۡ لِقَآءَ يَوۡمِكُمۡ هَٰذَاۚ قَالُواْ بَلَىٰ وَلَٰكِنۡ حَقَّتۡ كَلِمَةُ ٱلۡعَذَابِ عَلَى ٱلۡكَٰفِرِينَ ٧١

---

72. ಅವರೊಂದಿಗೆ ಹೇಳಲಾಗುವುದು: "ನೀವು ನರಕದ ದ್ವಾರಗಳನ್ನು ಪ್ರವೇಶಿಸಿರಿ. ನೀವು ಅದರಲ್ಲಿ ಶಾಶ್ವತವಾಗಿ ವಾಸಿಸುವಿರಿ. ಅಹಂಕಾರಿಗಳ ವಾಸಸ್ಥಳವು ಬಹಳ ನಿಕೃಷ್ಟವಾಗಿದೆ!"

قِيلَ ٱدۡخُلُوٓاْ أَبۡوَٰبَ جَهَنَّمَ خَٰلِدِينَ فِيهَاۖ فَبِئۡسَ مَثۡوَى ٱلۡمُتَكَبِّرِينَ ٧٢

---

73. ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಭಯಪಟ್ಟು ಜೀವಿಸಿದವರನ್ನು ಗುಂಪು ಗುಂಪಾಗಿ ಸ್ವರ್ಗಕ್ಕೆ ಸಾಗಿಸಲಾಗುವುದು. ಎಲ್ಲಿಯವರೆಗೆಂದರೆ ಅವರು ಅದರ ಸಮೀಪಕ್ಕೆ ಬಂದಾಗ ಅದರ ಬಾಗಿಲುಗಳನ್ನು ತೆರೆಯಲಾಗುವುದು. ಅವುಗಳ ಕಾವಲುಗಾರರು ಹೇಳುವರು: "ನಿಮ್ಮ ಮೇಲೆ ಶಾಂತಿಯಿರಲಿ! ನೀವು ಸಂತೋಷವಾಗಿರಿ. ನೀವು ಶಾಶ್ವತ ನಿವಾಸಿಗಳಾಗಿ ಇದನ್ನು ಪ್ರವೇಶಿಸಿರಿ."

وَسِيقَ ٱلَّذِينَ ٱتَّقَوۡاْ رَبَّهُمۡ إِلَى ٱلۡجَنَّةِ زُمَرًاۖ حَتَّىٰٓ إِذَا جَآءُوهَا وَفُتِحَتۡ أَبۡوَٰبُهَا وَقَالَ لَهُمۡ خَزَنَتُهَا سَلَٰمٌ عَلَيۡكُمۡ طِبۡتُمۡ فَٱدۡخُلُوهَا خَٰلِدِينَ ٧٣

---

74. ಅವರು ಹೇಳುವರು: "ಅಲ್ಲಾಹನಿಗೆ ಸರ್ವಸ್ತುತಿ. ಅವನು ನಮಗೆ ನೀಡಿದ ವಾಗ್ದಾನವನ್ನು ಈಡೇರಿಸಿದ್ದಾನೆ ಮತ್ತು ಸ್ವರ್ಗದಲ್ಲಿ ನಾವು ಇಚ್ಛಿಸುವ ಕಡೆ ವಾಸಿಸಬಹುದಾದ ರೀತಿಯಲ್ಲಿ ಈ ಸ್ವರ್ಗಭೂಮಿಗೆ ನಮ್ಮನ್ನು ಉತ್ತರಾಧಿಕಾರಿಗಳನ್ನಾಗಿ ಮಾಡಿದ್ದಾನೆ. ಕರ್ಮವೆಸಗಿದವರಿಗೆ ದೊರೆಯುವ ಪ್ರತಿಫಲವು ಬಹಳ ಉತ್ತಮವಾಗಿದೆ!

وَقَالُواْ ٱلۡحَمۡدُ لِلَّهِ ٱلَّذِي صَدَقَنَا وَعۡدَهُۥ وَأَوۡرَثَنَا ٱلۡأَرۡضَ نَتَبَوَّأُ مِنَ ٱلۡجَنَّةِ حَيۡثُ نَشَآءُۖ فَنِعۡمَ أَجۡرُ ٱلۡعَٰمِلِينَ ٧٤

---

75. ದೇವದೂತರುಗಳು ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಸ್ತುತಿಸುತ್ತಾ, ಅವನ ಪರಿಶುದ್ಧತೆಯನ್ನು ಕೊಂಡಾಡುತ್ತಾ ಸಿಂಹಾಸನದ ಸುತ್ತಲೂ ನೆರೆಯುವುದನ್ನು ನೀವು ನೋಡುವಿರಿ. ಅವರ ಮಧ್ಯೆ ನ್ಯಾಯಯುತವಾಗಿ ತೀರ್ಪು ನೀಡಲಾಗುವುದು. "ಸರ್ವಲೋಕಗಳ ಪರಿಪಾಲಕನಾದ ಅಲ್ಲಾಹನಿಗೆ ಸರ್ವಸ್ತುತಿ" ಎಂದು ಹೇಳಲಾಗುವುದು.

وَتَرَى ٱلۡمَلَٰٓئِكَةَ حَآفِّينَ مِنۡ حَوۡلِ ٱلۡعَرۡشِ يُسَبِّحُونَ بِحَمۡدِ رَبِّهِمۡۚ وَقُضِيَ بَيۡنَهُم بِٱلۡحَقِّۚ وَقِيلَ ٱلۡحَمۡدُ لِلَّهِ رَبِّ ٱلۡعَٰلَمِينَ ٧٥

# 40. ಗಾಫಿರ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಹಾ-ಮೀಮ್.

حمٓ ١

2. ಈ ಗ್ರಂಥವು ಪ್ರಬಲನು ಮತ್ತು ಸರ್ವಜ್ಞನಾದ ಅಲ್ಲಾಹನ ಕಡೆಯಿಂದ ಅವತೀರ್ಣವಾಗಿದೆ.

تَنزِيلُ ٱلۡكِتَٰبِ مِنَ ٱللَّهِ ٱلۡعَزِيزِ ٱلۡعَلِيمِ ٢

3. ಅವನು ಪಾಪವನ್ನು ಕ್ಷಮಿಸುವವನು, ಪಶ್ಚಾತ್ತಾಪವನ್ನು ಸ್ವೀಕರಿಸುವವನು, ಕಠಿಣವಾಗಿ ಶಿಕ್ಷಿಸುವವನು ಮತ್ತು ಅಪಾರ ಸಾಮರ್ಥ್ಯವುಳ್ಳವನಾಗಿದ್ದಾನೆ. ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ಗಮ್ಯಸ್ಥಾನವು ಅವನ ಬಳಿಗೇ ಆಗಿದೆ.

غَافِرِ ٱلذَّنۢبِ وَقَابِلِ ٱلتَّوۡبِ شَدِيدِ ٱلۡعِقَابِ ذِي ٱلطَّوۡلِۖ لَآ إِلَٰهَ إِلَّا هُوَۖ إِلَيۡهِ ٱلۡمَصِيرُ ٣

4. ಅಲ್ಲಾಹನ ವಚನಗಳ ಬಗ್ಗೆ ಸತ್ಯನಿಷೇಧಿಗಳು ಮಾತ್ರ ತರ್ಕಿಸುತ್ತಾರೆ. ಅವರು ಊರುಗಳಲ್ಲಿ ಸ್ವೇಚ್ಛವಾಗಿ ವಿಹರಿಸುವುದು ನಿಮ್ಮನ್ನು ಮರುಳುಗೊಳಿಸದಿರಲಿ.

مَا يُجَٰدِلُ فِيٓ ءَايَٰتِ ٱللَّهِ إِلَّا ٱلَّذِينَ كَفَرُواْ فَلَا يَغۡرُرۡكَ تَقَلُّبُهُمۡ فِي ٱلۡبِلَٰدِ ٤

5. ಅವರಿಗಿಂತ ಮೊದಲು ನೂಹರ ಜನರು ಮತ್ತು ಅವರ ನಂತರದ ಪಂಗಡಗಳು (ಪ್ರವಾದಿಗಳನ್ನು) ನಿಷೇಧಿಸಿದ್ದರು. ಎಲ್ಲಾ ಸಮುದಾಯಗಳ ಜನರೂ ತಮ್ಮ ಸಂದೇಶವಾಹಕರನ್ನು ಸೆರೆಹಿಡಿಯಲು ಪ್ರಯತ್ನಿಸಿದ್ದರು. ಸತ್ಯವನ್ನು ನಾಶ ಮಾಡಲು ಅವರು ಅಸತ್ಯದ ಮೂಲಕ ತರ್ಕಿಸಿದರು. ಆದ್ದರಿಂದ ನಾನು ಅವರನ್ನು ಹಿಡಿದು ಶಿಕ್ಷಿಸಿದೆನು. ಆಗ ನನ್ನ ಶಿಕ್ಷೆಯು ಹೇಗಿತ್ತು!

كَذَّبَتۡ قَبۡلَهُمۡ قَوۡمُ نُوحٖ وَٱلۡأَحۡزَابُ مِنۢ بَعۡدِهِمۡۖ وَهَمَّتۡ كُلُّ أُمَّةِۭ بِرَسُولِهِمۡ لِيَأۡخُذُوهُۖ وَجَٰدَلُواْ بِٱلۡبَٰطِلِ لِيُدۡحِضُواْ بِهِ ٱلۡحَقَّ فَأَخَذۡتُهُمۡۖ فَكَيۡفَ كَانَ عِقَابِ ٥

6. ಈ ರೀತಿ ಸತ್ಯನಿಷೇಧಿಗಳ ಮೇಲೆ ಅವರು ನರಕವಾಸಿಗಳು ಎಂಬ ತಮ್ಮ ಪರಿಪಾಲಕನ (ಅಲ್ಲಾಹನ) ವಚನವು ಖಾತ್ರಿಯಾಗಿ ಬಿಟ್ಟಿದೆ.

وَكَذَٰلِكَ حَقَّتۡ كَلِمَتُ رَبِّكَ عَلَى ٱلَّذِينَ كَفَرُوٓاْ أَنَّهُمۡ أَصۡحَٰبُ ٱلنَّارِ ٦

7. ಸಿಂಹಾಸನವನ್ನು ಹೊರುವವರು ಮತ್ತು ಅದರ ಸುತ್ತಲಲ್ಲಿರುವವರು (ದೇವದೂತರುಗಳು) ಅವರ ಪರಿಪಾಲಕನನ್ನು (ಅಲ್ಲಾಹನನ್ನು) ಸ್ತುತಿಸುವುದರೊಂದಿಗೆ ಅವನ ಪರಿಶುದ್ಧಿಯನ್ನು ಕೊಂಡಾಡುತ್ತಾರೆ. ಅವರು ಅವನಲ್ಲಿ ವಿಶ್ವಾಸವಿಟ್ಟಿದ್ದಾರೆ ಮತ್ತು ಸತ್ಯವಿಶ್ವಾಸಿಗಳಿಗಾಗಿ ಕ್ಷಮೆಯಾಚನೆ ಮಾಡುತ್ತಾ ಪ್ರಾರ್ಥಿಸುತ್ತಾರೆ: “ನಮ್ಮ ಪರಿಪಾಲಕನೇ! ನೀನು ನಿನ್ನ ದಯೆ ಮತ್ತು ಜ್ಞಾನದ ಮೂಲಕ ಎಲ್ಲಾ ವಸ್ತುಗಳನ್ನು ಆವರಿಸಿಕೊಂಡಿರುವೆ. ಆದ್ದರಿಂದ ಪಶ್ಚಾತ್ತಾಪಪಡುವವರನ್ನು ಮತ್ತು ನಿನ್ನ ಮಾರ್ಗವನ್ನು

ٱلَّذِينَ يَحۡمِلُونَ ٱلۡعَرۡشَ وَمَنۡ حَوۡلَهُۥ يُسَبِّحُونَ بِحَمۡدِ رَبِّهِمۡ وَيُؤۡمِنُونَ بِهِۦ وَيَسۡتَغۡفِرُونَ لِلَّذِينَ ءَامَنُواْ رَبَّنَا وَسِعۡتَ كُلَّ شَيۡءٖ رَّحۡمَةٗ وَعِلۡمٗا فَٱغۡفِرۡ لِلَّذِينَ تَابُواْ وَٱتَّبَعُواْ سَبِيلَكَ وَقِهِمۡ عَذَابَ ٱلۡجَحِيمِ ٧

ಹಿಂಬಾಲಿಸುವವರನ್ನು ಕ್ಷಮಿಸು. ಅವರನ್ನು ನರಕ ಶಿಕ್ಷೆಯಿಂದ ಪಾರು ಮಾಡು.

---

رَبَّنَا وَأَدۡخِلۡهُمۡ جَنَّٰتِ عَدۡنٍ ٱلَّتِي وَعَدتَّهُمۡ وَمَن صَلَحَ مِنۡ ءَابَآئِهِمۡ وَأَزۡوَٰجِهِمۡ وَذُرِّيَّٰتِهِمۡۚ إِنَّكَ أَنتَ ٱلۡعَزِيزُ ٱلۡحَكِيمُ ٨

8. ನಮ್ಮ ಪರಿಪಾಲಕನೇ! ನೀನು ಅವರನ್ನು, ಅವರ ಮಾತಾಪಿತರಲ್ಲಿ, ಪತ್ನಿಯರಲ್ಲಿ ಹಾಗೂ ಮಕ್ಕಳಲ್ಲಿರುವ ನೀತಿವಂತರನ್ನು ನೀನು ಅವರಿಗೆ ವಾಗ್ದಾನ ಮಾಡಿದ ಶಾಶ್ವತವಾಸಕ್ಕಿರುವ ಸ್ವರ್ಗಗಳಿಗೆ ಪ್ರವೇಶ ಮಾಡಿಸು. ನಿಶ್ಚಯವಾಗಿಯೂ ನೀನು ಪ್ರಬಲನು ಮತ್ತು ವಿವೇಕಪೂರ್ಣನಾಗಿರುವೆ.

---

وَقِهِمُ ٱلسَّيِّـَٔاتِۚ وَمَن تَقِ ٱلسَّيِّـَٔاتِ يَوۡمَئِذٖ فَقَدۡ رَحِمۡتَهُۥۚ وَذَٰلِكَ هُوَ ٱلۡفَوۡزُ ٱلۡعَظِيمُ ٩

9. ಅವರನ್ನು ಕೆಡುಕುಗಳಿಂದ ರಕ್ಷಿಸು. ಆ ದಿನ ನೀನು ಯಾರನ್ನು ಕೆಡುಕುಗಳಿಂದ ರಕ್ಷಿಸುವೆಯೋ ಅವನಿಗೆ ನೀನು ಖಂಡಿತ ಕರುಣೆ ತೋರಿರುವೆ. ಅದೇ ಮಹಾ ಯಶಸ್ಸು."

---

إِنَّ ٱلَّذِينَ كَفَرُواْ يُنَادَوۡنَ لَمَقۡتُ ٱللَّهِ أَكۡبَرُ مِن مَّقۡتِكُمۡ أَنفُسَكُمۡ إِذۡ تُدۡعَوۡنَ إِلَى ٱلۡإِيمَٰنِ فَتَكۡفُرُونَ ١٠

10. ನಿಶ್ಚಯವಾಗಿಯೂ ಸತ್ಯನಿಷೇಧಿಗಳನ್ನು ಕರೆದು ಹೀಗೆ ಹೇಳಲಾಗುವುದು: "ನಿಮಗೆ ನಿಮ್ಮ ಮೇಲಿರುವ ಕೋಪಕ್ಕಿಂತಲೂ ಹೆಚ್ಚು ಕೋಪವು ನಿಮ್ಮನ್ನು ಸತ್ಯವಿಶ್ವಾಸದ ಕಡೆಗೆ ಕರೆಯಲಾಗುತ್ತಿದ್ದೂ ಸಹ ನೀವು ಸತ್ಯವನ್ನು ನಿಷೇಧಿಸುತ್ತಿದ್ದ ಸಂದರ್ಭ ಅಲ್ಲಾಹನಿಗೆ ನಿಮ್ಮ ಮೇಲಿತ್ತು."

---

قَالُواْ رَبَّنَآ أَمَتَّنَا ٱثۡنَتَيۡنِ وَأَحۡيَيۡتَنَا ٱثۡنَتَيۡنِ فَٱعۡتَرَفۡنَا بِذُنُوبِنَا فَهَلۡ إِلَىٰ خُرُوجٖ مِّن سَبِيلٖ ١١

11. ಅವರು ಹೇಳುವರು: "ನಮ್ಮ ಪರಿಪಾಲಕನೇ! ನೀನು ನಮ್ಮನ್ನು ಎರಡು ಬಾರಿ ಸಾವನ್ನಪ್ಪುವಂತೆ ಮಾಡಿದೆ ಮತ್ತು ನಮಗೆ ಎರಡು ಬಾರಿ ಜೀವವನ್ನು ನೀಡಿದೆ.[1] ನಾವು ನಮ್ಮ ತಪ್ಪುಗಳನ್ನು ಒಪ್ಪಿಕೊಂಡಿದ್ದೇವೆ. ಆದ್ದರಿಂದ ಹೊರಹೋಗಲು ಯಾವುದಾದರೂ ದಾರಿಯಿದೆಯೇ?"

---

ذَٰلِكُم بِأَنَّهُۥٓ إِذَا دُعِيَ ٱللَّهُ وَحۡدَهُۥ كَفَرۡتُمۡ وَإِن يُشۡرَكۡ بِهِۦ تُؤۡمِنُواْۚ فَٱلۡحُكۡمُ لِلَّهِ ٱلۡعَلِيِّ ٱلۡكَبِيرِ ١٢

12. ಅದೇಕೆಂದರೆ, ಅಲ್ಲಾಹನೊಂದಿಗೆ ಮಾತ್ರ ಪ್ರಾರ್ಥಿಸಲಾದರೆ ನೀವು ನಿಷೇಧಿಸುತ್ತಿದ್ದಿರಿ ಮತ್ತು ಅವನೊಂದಿಗೆ ಸಹಭಾಗಿತ್ವ (ಶಿರ್ಕ್) ಮಾಡಲಾದರೆ ನೀವು ವಿಶ್ವಾಸವಿಡುತ್ತಿದ್ದಿರಿ. ಆದರೆ (ಇಂದು) ತೀರ್ಪು ನೀಡುವ ಅಧಿಕಾರವು ಅತ್ಯುನ್ನತನು ಮತ್ತು ಸರ್ವಶ್ರೇಷ್ಠನಾದ ಅಲ್ಲಾಹನಿಗಾಗಿದೆ.

---

هُوَ ٱلَّذِي يُرِيكُمۡ ءَايَٰتِهِۦ وَيُنَزِّلُ لَكُم مِّنَ ٱلسَّمَآءِ رِزۡقٗاۚ وَمَا يَتَذَكَّرُ إِلَّا مَن يُنِيبُ ١٣

13. ಅವನು ತನ್ನ ದೃಷ್ಟಾಂತಗಳನ್ನು ನಿಮಗೆ ತೋರಿಸಿಕೊಡುತ್ತಾನೆ ಮತ್ತು ಆಕಾಶದಿಂದ ನಿಮಗೆ ಉಪಜೀವನವನ್ನು ಇಳಿಸಿಕೊಡುತ್ತಾನೆ. (ಅಲ್ಲಾಹನ ಕಡೆಗೆ) ಮರಳುವವರು ಮಾತ್ರ ಉಪದೇಶವನ್ನು ಸ್ವೀಕರಿಸುತ್ತಾರೆ.

---

[1] ಮೊದಲನೇ ಸಾವು ಎಂದರೆ ಜನನಕ್ಕೆ ಮುನ್ನ ಇದ್ದಂತಹ ನಿರ್ಜೀವ ಸ್ಥಿತಿ. ಎರಡನೇ ಸಾವು ಮನುಷ್ಯನ ಸ್ವಾಭಾವಿಕ ಮರಣ. ಮೊದಲನೇ ಜೀವನವು ಇಹಲೋಕ ಜೀವನ ಮತ್ತು ಎರಡನೇ ಜೀವನವು ಪರಲೋಕ ಜೀವನ.

| | | |
|---|---|---|
| 14. | ನೀವು ಧರ್ಮವನ್ನು ಅಲ್ಲಾಹನಿಗೆ ನಿಷ್ಕಳಂಕಗೊಳಿಸಿ ಅವನನ್ನು ಕರೆದು ಪ್ರಾರ್ಥಿಸಿರಿ. ಸತ್ಯನಿಷೇಧಿಗಳು ಅಸಹ್ಯಪಟ್ಟರೂ ಸಹ. | فَٱدۡعُواْ ٱللَّهَ مُخۡلِصِينَ لَهُ ٱلدِّينَ وَلَوۡ كَرِهَ ٱلۡكَٰفِرُونَ ١٤ |
| 15. | ಅವನು ಉನ್ನತ ಪದವಿಗಳನ್ನು ಹೊಂದಿರುವವನು ಮತ್ತು ಸಿಂಹಾಸನದ ಒಡೆಯನಾಗಿದ್ದಾನೆ. ಅವನು ತನ್ನ ದಾಸರಲ್ಲಿ ಅವನು ಇಚ್ಛಿಸುವವರಿಗೆ ದೇವವಾಣಿಯನ್ನು ನೀಡುತ್ತಾನೆ. ಭೇಟಿಯ ದಿನದ ಬಗ್ಗೆ ಅವರು ಜನರಿಗೆ ಎಚ್ಚರಿಕೆ ನೀಡಲೆಂದು. | رَفِيعُ ٱلدَّرَجَٰتِ ذُو ٱلۡعَرۡشِ يُلۡقِي ٱلرُّوحَ مِنۡ أَمۡرِهِۦ عَلَىٰ مَن يَشَآءُ مِنۡ عِبَادِهِۦ لِيُنذِرَ يَوۡمَ ٱلتَّلَاقِ ١٥ |
| 16. | ಜನರೆಲ್ಲರೂ ಬಯಲಿಗೆ ಬರುವ ದಿನ. ಅವರಿಗೆ ಸಂಬಂಧಿಸಿದ ಯಾವುದೇ ವಿಷಯವು ಅಲ್ಲಾಹನಿಂದ ಮರೆಯಾಗಿರುವುದಿಲ್ಲ. ಇಂದು ಸಾರ್ವಭೌಮತ್ವವು ಯಾರಿಗೆ? ಏಕೈಕನು ಮತ್ತು ಸರ್ವಾಧಿಕಾರಿಯಾದ ಅಲ್ಲಾಹನಿಗೆ. | يَوۡمَ هُم بَٰرِزُونَۖ لَا يَخۡفَىٰ عَلَى ٱللَّهِ مِنۡهُمۡ شَيۡءٞۚ لِّمَنِ ٱلۡمُلۡكُ ٱلۡيَوۡمَۖ لِلَّهِ ٱلۡوَٰحِدِ ٱلۡقَهَّارِ ١٦ |
| 17. | ಇಂದು ಪ್ರತಿಯೊಬ್ಬನಿಗೂ ಅವನು ಮಾಡಿದ ಕರ್ಮಗಳ ಪ್ರತಿಫಲವನ್ನು ನೀಡಲಾಗುವುದು. ಇಂದು ಯಾರಿಗೂ ಅನ್ಯಾಯವಾಗುವುದಿಲ್ಲ. ನಿಶ್ಚಯವಾಗಿಯೂ ಅಲ್ಲಾಹು ಅತಿವೇಗವಾಗಿ ವಿಚಾರಣೆ ಮಾಡುತ್ತಾನೆ. | ٱلۡيَوۡمَ تُجۡزَىٰ كُلُّ نَفۡسِۭ بِمَا كَسَبَتۡۚ لَا ظُلۡمَ ٱلۡيَوۡمَۚ إِنَّ ٱللَّهَ سَرِيعُ ٱلۡحِسَابِ ١٧ |
| 18. | ಅವರಿಗೆ ಬಹಳ ಹತ್ತಿರವಾಗುವ ಆ ದಿನದ (ಪುನರುತ್ಥಾನ ದಿನದ) ಬಗ್ಗೆ ಎಚ್ಚರಿಕೆ ನೀಡಿರಿ. ಹೃದಯಗಳು ಗಂಟಲಿಗೆ ತಲುಪುವ ಮತ್ತು ಅವರೆಲ್ಲರೂ ನಿಶ್ಶಬ್ದರಾಗುವ ಸಂದರ್ಭ. ಅಕ್ರಮಿಗಳಿಗೆ ಯಾವುದೇ ಆಪ್ತಮಿತ್ರರು ಅಥವಾ ಅಂಗೀಕಾರಯೋಗ್ಯ ಶಿಫಾರಸು ಮಾಡುವವರು ಯಾರೂ ಇರಲಾರರು. | وَأَنذِرۡهُمۡ يَوۡمَ ٱلۡأٓزِفَةِ إِذِ ٱلۡقُلُوبُ لَدَى ٱلۡحَنَاجِرِ كَٰظِمِينَۚ مَا لِلظَّٰلِمِينَ مِنۡ حَمِيمٖ وَلَا شَفِيعٖ يُطَاعُ ١٨ |
| 19. | ಅವನು ಕಣ್ಣುಗಳ ವಂಚನೆಯ ನೋಟಗಳನ್ನು ಮತ್ತು ಹೃದಯಗಳು ಬಚ್ಚಿಡುವುದನ್ನು ತಿಳಿಯುತ್ತಾನೆ. | يَعۡلَمُ خَآئِنَةَ ٱلۡأَعۡيُنِ وَمَا تُخۡفِي ٱلصُّدُورُ ١٩ |
| 20. | ಅಲ್ಲಾಹು ಸರಿಯಾದ ರೀತಿಯಲ್ಲಿ ತೀರ್ಪು ನೀಡುತ್ತಾನೆ. ಅವರು ಅವನನ್ನು ಬಿಟ್ಟು ಯಾರನ್ನು ಕರೆದು ಪ್ರಾರ್ಥಿಸುತ್ತಾರೋ ಅವರು ಯಾವುದೇ ವಿಷಯದಲ್ಲೂ ತೀರ್ಪು ನೀಡುವುದಿಲ್ಲ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ನೋಡುವವನಾಗಿದ್ದಾನೆ. | وَٱللَّهُ يَقۡضِي بِٱلۡحَقِّۖ وَٱلَّذِينَ يَدۡعُونَ مِن دُونِهِۦ لَا يَقۡضُونَ بِشَيۡءٍۗ إِنَّ ٱللَّهَ هُوَ ٱلسَّمِيعُ ٱلۡبَصِيرُ ٢٠ |
| 21. | ಅವರು ಭೂಮಿಯಲ್ಲಿ ಸಂಚರಿಸಿ ಅವರಿಗಿಂತ ಮೊದಲಿನವರ ಅಂತ್ಯವು ಹೇಗಿತ್ತೆಂದು ನೋಡುವುದಿಲ್ಲವೇ? ಅವರು ಶಕ್ತಿ-ಸಾಮರ್ಥ್ಯದಲ್ಲಿ ಮತ್ತು ಭೂಮಿಯಲ್ಲಿ ಸ್ಮಾರಕಗಳನ್ನು ಬಿಟ್ಟುಹೋಗುವುದರಲ್ಲಿ ಇವರಿಗಿಂತ ಹೆಚ್ಚು ಶ್ರೇಷ್ಠರಾಗಿದ್ದರು. ಆದರೆ ಅವರು ಮಾಡಿದ ಪಾಪಗಳ ಕಾರಣದಿಂದ ಅಲ್ಲಾಹು ಅವರನ್ನು ಹಿಡಿದು | أَوَلَمۡ يَسِيرُواْ فِي ٱلۡأَرۡضِ فَيَنظُرُواْ كَيۡفَ كَانَ عَٰقِبَةُ ٱلَّذِينَ كَانُواْ مِن قَبۡلِهِمۡۚ كَانُواْ هُمۡ أَشَدَّ مِنۡهُمۡ قُوَّةٗ وَءَاثَارٗا فِي ٱلۡأَرۡضِ فَأَخَذَهُمُ ٱللَّهُ بِذُنُوبِهِمۡ وَمَا كَانَ لَهُم مِّنَ ٱللَّهِ مِن وَاقٖ ٢١ |

ಶಿಕ್ಷಿಸಿದನು. ಅವರನ್ನು ಅಲ್ಲಾಹನ ಶಿಕ್ಷೆಯಿಂದ ರಕ್ಷಿಸುವವರು
ಯಾರೂ ಇರಲಿಲ್ಲ.

---

22. ಅದೇಕೆಂದರೆ ಅವರ ಬಳಿಗೆ ಸಂದೇಶವಾಹಕರುಗಳು ಸ್ಪಷ್ಟ ಸಾಕ್ಷ್ಯಾಧಾರಗಳೊಂದಿಗೆ ಬರುತ್ತಿದ್ದರು. ಆದರೆ ಅವರು ನಿಷೇಧಿಸಿದರು. ಆದ್ದರಿಂದ ಅಲ್ಲಾಹು ಅವರನ್ನು ಹಿಡಿದು ಶಿಕ್ಷಿಸಿದನು. ನಿಶ್ಚಯವಾಗಿಯೂ ಅವನು ಮಹಾ ಶಕ್ತಿಶಾಲಿ ಮತ್ತು ಕಠಿಣವಾಗಿ ಶಿಕ್ಷಿಸುವವನಾಗಿದ್ದಾನೆ.

ذَٰلِكَ بِأَنَّهُمۡ كَانَت تَّأۡتِيهِمۡ رُسُلُهُم بِٱلۡبَيِّنَٰتِ فَكَفَرُواْ فَأَخَذَهُمُ ٱللَّهُۚ إِنَّهُۥ قَوِيٌّ شَدِيدُ ٱلۡعِقَابِ ﴿٢٢﴾

---

23. ನಿಶ್ಚಯವಾಗಿಯೂ ನಾವು ಮೂಸಾರನ್ನು ನಮ್ಮ ವಚನಗಳೊಂದಿಗೆ ಮತ್ತು ಸ್ಪಷ್ಟ ಸಾಕ್ಷ್ಯಾಧಾರಗಳೊಂದಿಗೆ ಕಳುಹಿಸಿದ್ದೆವು.

وَلَقَدۡ أَرۡسَلۡنَا مُوسَىٰ بِـَٔايَٰتِنَا وَسُلۡطَٰنٖ مُّبِينٍ ﴿٢٣﴾

---

24. ಫರೋಹ, ಹಾಮಾನ್ ಮತ್ತು ಕಾರೂನನ ಬಳಿಗೆ. ಆದರೆ ಅವರು ಹೇಳಿದರು: “ಮಾಟಗಾರ ಮತ್ತು ಸುಳ್ಳುಗಾರ.”

إِلَىٰ فِرۡعَوۡنَ وَهَٰمَٰنَ وَقَٰرُونَ فَقَالُواْ سَٰحِرٞ كَذَّابٞ ﴿٢٤﴾

---

25. ಅವರು (ಮೂಸಾ) ನಮ್ಮ ಕಡೆಯ ಸತ್ಯದೊಂದಿಗೆ ಅವರ ಬಳಿಗೆ ಬಂದಾಗ ಅವರು ಹೇಳಿದರು: “ಅವನ ಜೊತೆಗೆ ವಿಶ್ವಾಸವಿ-ಟ್ಟವರ ಗಂಡುಮಕ್ಕಳನ್ನು ಕೊಲ್ಲಿರಿ ಮತ್ತು ಅವರ ಹೆಣ್ಣುಮ-ಕ್ಕಳನ್ನು ಜೀವಂತ ಬಿಡಿ.” ಸತ್ಯನಿಷೇಧಿಗಳ ತಂತ್ರಗಾರಿಕೆಯು ಪ್ರಮಾದದಲ್ಲೇ ಇದೆ.

فَلَمَّا جَآءَهُم بِٱلۡحَقِّ مِنۡ عِندِنَا قَالُواْ ٱقۡتُلُوٓاْ أَبۡنَآءَ ٱلَّذِينَ ءَامَنُواْ مَعَهُۥ وَٱسۡتَحۡيُواْ نِسَآءَهُمۡۚ وَمَا كَيۡدُ ٱلۡكَٰفِرِينَ إِلَّا فِي ضَلَٰلٖ ﴿٢٥﴾

---

26. ಫರೋಹ ಹೇಳಿದನು: “ನನ್ನನ್ನು ಬಿಡಿ! ನಾನು ಮೂಸಾನನ್ನು ಕೊಂದು ಬಿಡುತ್ತೇನೆ. ಅವನು ಅವನ ಪರಿಪಾಲಕನನ್ನು (ಅಲ್ಲಾಹನನ್ನು) ಕರೆಯಲಿ! ಅವನು ನಿಮ್ಮ ಧರ್ಮವನ್ನು ಬದಲಾಯಿಸಬಹುದು ಅಥವಾ ಭೂಮಿಯಲ್ಲಿ ಕಿಡಿಗೇಡಿತನ ಮಾಡಬಹುದು ಎಂದು ನನಗೆ ಭಯವಾಗುತ್ತಿದೆ.”

وَقَالَ فِرۡعَوۡنُ ذَرُونِيٓ أَقۡتُلۡ مُوسَىٰ وَلۡيَدۡعُ رَبَّهُۥٓۖ إِنِّيٓ أَخَافُ أَن يُبَدِّلَ دِينَكُمۡ أَوۡ أَن يُظۡهِرَ فِي ٱلۡأَرۡضِ ٱلۡفَسَادَ ﴿٢٦﴾

---

27. ಮೂಸಾ ಹೇಳಿದರು: “ವಿಚಾರಣಾ ದಿನದಲ್ಲಿ ವಿಶ್ವಾಸವಿಡದ ಎಲ್ಲಾ ಅಹಂಕಾರಿಗಳ ವಿರುದ್ಧ ನಾನು ನನ್ನ ಮತ್ತು ನಿಮ್ಮ ಪರಿಪಾಲಕನೊಂದಿಗೆ (ಅಲ್ಲಾಹನೊಂದಿಗೆ) ಅಭಯ ಯಾಚಿಸುತ್ತೇನೆ.”

وَقَالَ مُوسَىٰٓ إِنِّي عُذۡتُ بِرَبِّي وَرَبِّكُم مِّن كُلِّ مُتَكَبِّرٖ لَّا يُؤۡمِنُ بِيَوۡمِ ٱلۡحِسَابِ ﴿٢٧﴾

---

28. ಫರೋಹನ ಜನರಲ್ಲಿ ಸೇರಿದ ಮತ್ತು ತನ್ನ ವಿಶ್ವಾಸವನ್ನು ಮುಚ್ಚಿಟ್ಟಿದ್ದ ಸತ್ಯವಿಶ್ವಾಸಿ ವ್ಯಕ್ತಿಯೊಬ್ಬರು ಹೇಳಿದರು: “ನನ್ನ ಪರಿಪಾಲಕ ಅಲ್ಲಾಹು ಎಂದು ಹೇಳುವ ಕಾರಣಕ್ಕಾಗಿ ನೀವು ಒಬ್ಬ ಮನುಷ್ಯನನ್ನು ಕೊಲ್ಲುತ್ತೀರಾ? ಅವರು ನಿಮ್ಮ ಬಳಿಗೆ ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಸ್ಪಷ್ಟ ಸಾಕ್ಷ್ಯಾಧಾರಗಳನ್ನು

وَقَالَ رَجُلٞ مُّؤۡمِنٞ مِّنۡ ءَالِ فِرۡعَوۡنَ يَكۡتُمُ إِيمَٰنَهُۥٓ أَتَقۡتُلُونَ رَجُلًا أَن يَقُولَ رَبِّيَ ٱللَّهُ وَقَدۡ جَآءَكُم بِٱلۡبَيِّنَٰتِ مِن رَّبِّكُمۡۖ وَإِن يَكُ كَٰذِبٗا فَعَلَيۡهِ كَذِبُهُۥۖ وَإِن يَكُ صَادِقٗا

ತಂದಿದ್ದಾರೆ. ಅವರು ಸುಳ್ಳು ಹೇಳುತ್ತಿದ್ದರೆ ಅದರ ಪಾಪವು ಅವರಿಗೇ ಆಗಿದೆ. ಆದರೆ ಅವರು ಸತ್ಯ ಹೇಳುತ್ತಿದ್ದರೆ ಅವರು ನಿಮಗೆ ಎಚ್ಚರಿಕೆ ನೀಡುವ ಕೆಲವು ಸಂಗತಿಗಳು (ಶಿಕ್ಷೆಗಳು) ನಿಶ್ಚಯವಾಗಿಯೂ ನಿಮ್ಮ ಮೇಲೆ ಎರಗುವುದು. ನಿಶ್ಚಯವಾಗಿಯೂ ಅತಿರೇಕಿ ಮತ್ತು ಸುಳ್ಳನಾಗಿರುವ ಯಾರಿಗೂ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ.

يُصِبۡكُم بَعۡضُ ٱلَّذِي يَعِدُكُمۡۖ إِنَّ ٱللَّهَ لَا يَهۡدِي مَنۡ هُوَ مُسۡرِفٞ كَذَّابٞ ٢٨

---

29. ಓ ನನ್ನ ಜನರೇ! ನೀವು ಭೂಮಿಯಲ್ಲಿ ಪ್ರಾಬಲ್ಯ ಪಡೆದಿರುವ ಕಾರಣ ಇಂದು ಇದರ ಸಾರ್ವಭೌಮತ್ವವು ನಿಮ್ಮ ವಶದಲ್ಲಿದೆ. ಆದರೆ ಅಲ್ಲಾಹನ ಶಿಕ್ಷೆ ನಮ್ಮ ಬಳಿಗೆ ಬಂದರೆ ನಮಗೆ ಸಹಾಯ ಮಾಡುವವರು ಯಾರು?" ಫರೋಹ ಹೇಳಿದನು: "ನಾನು ಸ್ವತಃ ನನಗಾಗಿ ಸರಿಯೆಂದು ಕಾಣುವ ಮಾರ್ಗವನ್ನೇ ನಿಮಗೆ ತಿಳಿಸುತ್ತಿದ್ದೇನೆ. ನಾನು ನಿಮಗೆ ಒಳಿತಿನ ಮಾರ್ಗವನ್ನೇ ತೋರಿಸಿಕೊಡುತ್ತಿದ್ದೇನೆ."

يَٰقَوۡمِ لَكُمُ ٱلۡمُلۡكُ ٱلۡيَوۡمَ ظَٰهِرِينَ فِي ٱلۡأَرۡضِ فَمَن يَنصُرُنَا مِنۢ بَأۡسِ ٱللَّهِ إِن جَآءَنَاۚ قَالَ فِرۡعَوۡنُ مَآ أُرِيكُمۡ إِلَّا مَآ أَرَىٰ وَمَآ أَهۡدِيكُمۡ إِلَّا سَبِيلَ ٱلرَّشَادِ ٢٩

---

30. ಆ ಸತ್ಯವಿಶ್ವಾಸಿ ವ್ಯಕ್ತಿ ಹೇಳಿದರು: "ಓ ನನ್ನ ಜನರೇ! ಇತರ ಸಮುದಾಯಗಳಿಗೆ ಸಂಭವಿಸಿದ ಆ ದಿನವು (ಕೆಟ್ಟ ಶಿಕ್ಷೆ) ನಿಮಗೂ ಸಂಭವಿಸಬಹುದೆಂದು ನನಗೆ ಭಯವಾಗುತ್ತಿದೆ.

وَقَالَ ٱلَّذِيٓ ءَامَنَ يَٰقَوۡمِ إِنِّيٓ أَخَافُ عَلَيۡكُم مِّثۡلَ يَوۡمِ ٱلۡأَحۡزَابِ ٣٠

---

31. ಅಂದರೆ ನೂಹರ ಜನರು, ಆದ್ ಗೋತ್ರ, ಸಮೂದ್ ಗೋತ್ರ ಮತ್ತು ಅವರ ನಂತರದವರ ಸ್ಥಿತಿಯಂತೆ. ಅಲ್ಲಾಹು ತನ್ನ ದಾಸರಿಗೆ ಯಾವುದೇ ರೀತಿಯ ಅನ್ಯಾಯ ಮಾಡಲು ಬಯಸುವುದಿಲ್ಲ.

مِثۡلَ دَأۡبِ قَوۡمِ نُوحٖ وَعَادٖ وَثَمُودَ وَٱلَّذِينَ مِنۢ بَعۡدِهِمۡۚ وَمَا ٱللَّهُ يُرِيدُ ظُلۡمٗا لِّلۡعِبَادِ ٣١

---

32. ಓ ನನ್ನ ಜನರೇ! ನಿಶ್ಚಯವಾಗಿಯೂ ಜನರು ಮೊರೆಯಿಟ್ಟು ರೋದಿಸುವ ಆ ದಿನವನ್ನು ನಾನು ನಿಮ್ಮ ವಿಷಯದಲ್ಲಿ ಭಯಪಡುತ್ತೇನೆ.

وَيَٰقَوۡمِ إِنِّيٓ أَخَافُ عَلَيۡكُمۡ يَوۡمَ ٱلتَّنَادِ ٣٢

---

33. ಅಂದರೆ ನೀವು ಬೆನ್ನು ತೋರಿಸಿ ಓಡುವ ದಿನ! ನಿಮ್ಮನ್ನು ಅಲ್ಲಾಹನ ಶಿಕ್ಷೆಯಿಂದ ರಕ್ಷಿಸುವವರು ಯಾರೂ ಇರುವುದಿಲ್ಲ. ಅಲ್ಲಾಹು ಯಾರನ್ನಾದರೂ ದಾರಿತಪ್ಪಿಸಿದರೆ ನಂತರ ಅವನಿಗೆ ಸನ್ಮಾರ್ಗ ತೋರಿಸುವವರು ಯಾರೂ ಇಲ್ಲ.

يَوۡمَ تُوَلُّونَ مُدۡبِرِينَ مَا لَكُم مِّنَ ٱللَّهِ مِنۡ عَاصِمٖۗ وَمَن يُضۡلِلِ ٱللَّهُ فَمَا لَهُۥ مِنۡ هَادٖ ٣٣

---

34. ಇದಕ್ಕೆ ಮೊದಲು ಯೂಸುಫರು ನಿಮ್ಮ ಬಳಿಗೆ ಸ್ಪಷ್ಟ ಸಾಕ್ಷ್ಯಾಧಾರ-ಗಳೊಂದಿಗೆ ಬಂದಿದ್ದರು. ಆದರೂ ಅವರು ನಿಮ್ಮ ಬಳಿಗೆ ತಂದ (ಸಾಕ್ಷ್ಯಾಧಾರಗಳ) ಬಗ್ಗೆ ನೀವು ಸಂದೇಹದಲ್ಲೇ ಇದ್ದಿರಿ. ಎಲ್ಲಿಯ-ವರೆಗೆಂದರೆ ಅವರು ನಿಧನರಾದಾಗ, "ಇವರ ಬಳಿಕ ಅಲ್ಲಾಹು

وَلَقَدۡ جَآءَكُمۡ يُوسُفُ مِن قَبۡلُ بِٱلۡبَيِّنَٰتِ فَمَا زِلۡتُمۡ فِي شَكّٖ مِّمَّا جَآءَكُم بِهِۦۖ حَتَّىٰٓ إِذَا هَلَكَ قُلۡتُمۡ لَن يَبۡعَثَ ٱللَّهُ مِنۢ بَعۡدِهِۦ رَسُولٗاۚ

ಇನ್ನೊಬ್ಬ ಸಂದೇಶವಾಹಕರನ್ನು ಕಳುಹಿಸುವುದಿಲ್ಲ" ಎಂದು ನೀವು ಹೇಳಿದಿರಿ. ಈ ರೀತಿ ಅಲ್ಲಾಹು ಎಲ್ಲೆ ಮೀರಿದವರನ್ನು ಮತ್ತು ಸಂಶಯಗ್ರಸ್ಥರನ್ನು ದಾರಿತಪ್ಪಿಸುತ್ತಾನೆ.

كَذَٰلِكَ يُضِلُّ ٱللَّهُ مَنۡ هُوَ مُسۡرِفٞ مُّرۡتَابٌ ﴿٣٤﴾

---

35. ಅವರು ತಮ್ಮ ಬಳಿಗೆ ಬಂದ ಯಾವುದೇ ಸ್ಪಷ್ಟ ಪುರಾವೆಯಿಲ್ಲದೆ ಅಲ್ಲಾಹನ ವಚನಗಳ ವಿಷಯದಲ್ಲಿ ತರ್ಕಿಸುವವರು. ಇದು ಅಲ್ಲಾಹನ ಬಳಿ ಮತ್ತು ಸತ್ಯವಿಶ್ವಾಸಿಗಳ ಬಳಿ ಮಹಾ ಅಸಂತೃಪ್ತಿಯ ವಿಷಯವಾಗಿದೆ. ಈ ರೀತಿ ಅಲ್ಲಾಹು ಎಲ್ಲಾ ಅಹಂಕಾರಿಗಳ ಮತ್ತು ಗರ್ವಿಷ್ಠರ ಹೃದಯಗಳಿಗೆ ಮೊಹರು ಹಾಕುತ್ತಾನೆ.

ٱلَّذِينَ يُجَٰدِلُونَ فِيٓ ءَايَٰتِ ٱللَّهِ بِغَيۡرِ سُلۡطَٰنٍ أَتَىٰهُمۡۖ كَبُرَ مَقۡتًا عِندَ ٱللَّهِ وَعِندَ ٱلَّذِينَ ءَامَنُواْۚ كَذَٰلِكَ يَطۡبَعُ ٱللَّهُ عَلَىٰ كُلِّ قَلۡبِ مُتَكَبِّرٖ جَبَّارٖ ﴿٣٥﴾

---

36. ಫರೋಹ ಹೇಳಿದನು: "ಓ ಹಾಮಾನ್! ನನಗೆ ಒಂದು ಗೋಪುರವನ್ನು ನಿರ್ಮಿಸಿಕೊಡು. ನಾನು ಆ ಬಾಗಿಲುಗಳಿಗೆ ತಲುಪುವುದಕ್ಕಾಗಿ.

وَقَالَ فِرۡعَوۡنُ يَٰهَٰمَٰنُ ٱبۡنِ لِي صَرۡحٗا لَّعَلِّيٓ أَبۡلُغُ ٱلۡأَسۡبَٰبَ ﴿٣٦﴾

---

37. ಅಂದರೆ ಆಕಾಶಗಳ ಬಾಗಿಲುಗಳಿಗೆ. ನನಗೆ ಮೂಸಾನ ದೇವನನ್ನು ಇಣುಕಿ ನೋಡಬೇಕು. ನಿಶ್ಚಯವಾಗಿಯೂ ಅವನು ಸುಳ್ಳು ಹೇಳುತ್ತಿದ್ದಾನೆಂದು ನಾನು ಭಾವಿಸುತ್ತಿದ್ದೇನೆ." ಈ ರೀತಿ ಫರೋಹನಿಗೆ ಅವನ ದುಷ್ಕೃತ್ಯವನ್ನು ಅಲಂಕರಿಸಿ ತೋರಿಸಲಾಗಿದೆ ಮತ್ತು ಅವನನ್ನು ನೇರ ಮಾರ್ಗದಿಂದ ತಡೆಯಲಾಗಿದೆ. ಫರೋಹನ (ಎಲ್ಲಾ) ತಂತ್ರಗಾರಿಕೆಗಳು ನಷ್ಟದಲ್ಲೇ ಇವೆ.

أَسۡبَٰبَ ٱلسَّمَٰوَٰتِ فَأَطَّلِعَ إِلَىٰٓ إِلَٰهِ مُوسَىٰ وَإِنِّي لَأَظُنُّهُۥ كَٰذِبٗاۚ وَكَذَٰلِكَ زُيِّنَ لِفِرۡعَوۡنَ سُوٓءُ عَمَلِهِۦ وَصُدَّ عَنِ ٱلسَّبِيلِۚ وَمَا كَيۡدُ فِرۡعَوۡنَ إِلَّا فِي تَبَابٖ ﴿٣٧﴾

---

38. ಆ ಸತ್ಯವಿಶ್ವಾಸಿ ವ್ಯಕ್ತಿ ಹೇಳಿದರು: "ಓ ನನ್ನ ಜನರೇ! ನನ್ನನ್ನು ಅನುಸರಿಸಿರಿ! ನಾನು ನಿಮಗೆ ಒಳಿತಿನ ಮಾರ್ಗವನ್ನು ತೋರಿಸುತ್ತೇನೆ.

وَقَالَ ٱلَّذِيٓ ءَامَنَ يَٰقَوۡمِ ٱتَّبِعُونِ أَهۡدِكُمۡ سَبِيلَ ٱلرَّشَادِ ﴿٣٨﴾

---

39. ಓ ನನ್ನ ಜನರೇ! ಈ ಇಹಲೋಕ ಜೀವನವು ಒಂದು (ತಾತ್ಕಾಲಿಕ) ಆನಂದವಾಗಿದೆ. ನಿಶ್ಚಯವಾಗಿಯೂ ಶಾಶ್ವತ ವಾಸದ ಭವನವು ಪರಲೋಕವಾಗಿದೆ.

يَٰقَوۡمِ إِنَّمَا هَٰذِهِ ٱلۡحَيَوٰةُ ٱلدُّنۡيَا مَتَٰعٞ وَإِنَّ ٱلۡأٓخِرَةَ هِيَ دَارُ ٱلۡقَرَارِ ﴿٣٩﴾

---

40. ಯಾರು ಒಂದು ಕೆಡುಕು ಮಾಡುತ್ತಾರೋ ಅವನಿಗೆ ಅದಕ್ಕೆ ಸಮಾನವಾದ ಪ್ರತಿಫಲವನ್ನೇ ನೀಡಲಾಗುತ್ತದೆ. ಆದರೆ ಯಾರು ಸತ್ಯವಿಶ್ವಾಸಿಯಾಗಿದ್ದು ಸತ್ಕರ್ಮವೆಸಗುತ್ತಾರೋ ಅವರು—ಪುರುಷರಾಗಿದ್ದರೂ ಸ್ತ್ರೀಯರಾಗಿದ್ದರೂ—ಸ್ವರ್ಗವನ್ನು ಪ್ರವೇಶಿಸುವರು. ಅಲ್ಲಿ ಅವರಿಗೆ ಲೆಕ್ಕವಿಲ್ಲದೆ ಉಪಜೀವನವನ್ನು ಒದಗಿಸಲಾಗುವುದು.

مَنۡ عَمِلَ سَيِّئَةٗ فَلَا يُجۡزَىٰٓ إِلَّا مِثۡلَهَاۖ وَمَنۡ عَمِلَ صَٰلِحٗا مِّن ذَكَرٍ أَوۡ أُنثَىٰ وَهُوَ مُؤۡمِنٞ فَأُوْلَٰٓئِكَ يَدۡخُلُونَ ٱلۡجَنَّةَ يُرۡزَقُونَ فِيهَا بِغَيۡرِ حِسَابٖ ﴿٤٠﴾

| | |
|---|---|
| **41.** ಓ ನನ್ನ ಜನರೇ! ಇದೆಂತಹ ಸಂಗತಿ? ನಾನು ನಿಮ್ಮನ್ನು ಮೋಕ್ಷದ ಕಡೆಗೆ ಕರೆಯುತ್ತಿದ್ದೇನೆ. ಆದರೆ ನೀವು ನನ್ನನ್ನು ನರಕಕ್ಕೆ ಕರೆಯುತ್ತಿದ್ದೀರಿ! | وَيَٰقَوۡمِ مَا لِيٓ أَدۡعُوكُمۡ إِلَى ٱلنَّجَوٰةِ وَتَدۡعُونَنِيٓ إِلَى ٱلنَّارِ ﴿٤١﴾ |
| **42.** ನಾನು ಅಲ್ಲಾಹನನ್ನು ನಿಷೇಧಿಸಲು ಮತ್ತು ನನಗೆ ಯಾವುದೇ ತಿಳುವಳಿಕೆಯಿಲ್ಲದ್ದನ್ನು ಅವನೊಂದಿಗೆ ಸಹಭಾಗಿಯನ್ನಾಗಿ ಮಾಡಲು ನೀವು ನನ್ನನ್ನು ಕರೆಯುತ್ತಿದ್ದೀರಿ! ಆದರೆ ನಾನು ನಿಮ್ಮನ್ನು ಪ್ರಬಲನು ಮತ್ತು ಕ್ಷಮಿಸುವವನಾದ ಅಲ್ಲಾಹನ ಕಡೆಗೆ ಕರೆಯುತ್ತಿದ್ದೇನೆ. | تَدۡعُونَنِي لِأَكۡفُرَ بِٱللَّهِ وَأُشۡرِكَ بِهِۦ مَا لَيۡسَ لِي بِهِۦ عِلۡمٞ وَأَنَا۠ أَدۡعُوكُمۡ إِلَى ٱلۡعَزِيزِ ٱلۡغَفَّٰرِ ﴿٤٢﴾ |
| **43.** ನೀವು ನನ್ನನ್ನು ಯಾವುದರ ಕಡೆಗೆ ಕರೆಯುತ್ತಿದ್ದೀರೋ ಅದು ಇಹಲೋಕದಲ್ಲಿ ಅಥವಾ ಪರಲೋಕದಲ್ಲಿ ಯಾವುದೇ ಪ್ರಾರ್ಥನೆಗೆ ಅರ್ಹವಲ್ಲ ಮತ್ತು ನಾವು ಮರಳಿ ಹೋಗಬೇಕಾದುದು ಅಲ್ಲಾಹನ ಬಳಿಗಾಗಿದೆ ಹಾಗೂ ಎಲ್ಲೆ ಮೀರಿದವರು ನರಕವಾಸಿಗಳಾಗಿದ್ದಾರೆ ಎಂಬುದು ದೃಢಪಟ್ಟ ವಿಷಯವಾಗಿದೆ. | لَا جَرَمَ أَنَّمَا تَدۡعُونَنِيٓ إِلَيۡهِ لَيۡسَ لَهُۥ دَعۡوَةٞ فِي ٱلدُّنۡيَا وَلَا فِي ٱلۡأٓخِرَةِ وَأَنَّ مَرَدَّنَآ إِلَى ٱللَّهِ وَأَنَّ ٱلۡمُسۡرِفِينَ هُمۡ أَصۡحَٰبُ ٱلنَّارِ ﴿٤٣﴾ |
| **44.** ನಾನು (ಈಗ) ನಿಮ್ಮೊಂದಿಗೆ ಹೇಳುವ ಈ ವಿಷಯಗಳು ಮುಂದೆ ನಿಮಗೆ ನೆನಪಿಗೆ ಬರಲಿದೆ. ನಾನು ನನ್ನ ಕಾರ್ಯವನ್ನು ಅಲ್ಲಾಹನಿಗೆ ವಹಿಸಿಕೊಡುತ್ತೇನೆ. ನಿಶ್ಚಯವಾಗಿಯೂ ಅಲ್ಲಾಹು ದಾಸರನ್ನು ನೋಡುತ್ತಿದ್ದಾನೆ.” | فَسَتَذۡكُرُونَ مَآ أَقُولُ لَكُمۡۚ وَأُفَوِّضُ أَمۡرِيٓ إِلَى ٱللَّهِۚ إِنَّ ٱللَّهَ بَصِيرُۢ بِٱلۡعِبَادِ ﴿٤٤﴾ |
| **45.** ಆದ್ದರಿಂದ ಅಲ್ಲಾಹು ಆ ವ್ಯಕ್ತಿಯನ್ನು ಅವರ ಎಲ್ಲಾ ತಂತ್ರಗಾರಿಕೆಗಳ ದುಷ್ಪರಿಣಾಮಗಳಿಂದ ರಕ್ಷಿಸಿದನು. ಫರೋಹನ ಜನರನ್ನು ಕಠೋರ ಶಿಕ್ಷೆಯು ಆವರಿಸಿಕೊಂಡಿತು. | فَوَقَىٰهُ ٱللَّهُ سَيِّـَٔاتِ مَا مَكَرُواْۖ وَحَاقَ بِـَٔالِ فِرۡعَوۡنَ سُوٓءُ ٱلۡعَذَابِ ﴿٤٥﴾ |
| **46.** ನರಕಾಗ್ನಿ! ಬೆಳಿಗ್ಗೆ ಮತ್ತು ಸಂಜೆ ಅವರನ್ನು ಅದರ ಮುಂದೆ ಪ್ರದ-ರ್ಶಿಸಲಾಗುವುದು.[1] ಅಂತ್ಯಸಮಯವು ಸಂಭವಿಸುವ ದಿನ “ಫರೋಹನ ಕುಟುಂಬವನ್ನು ಅತಿಕ್ರೂರ ಶಿಕ್ಷೆಗೆ ಹಾಕಿರಿ” (ಎಂದು ಆದೇಶಿಸಲಾಗುವುದು). | ٱلنَّارُ يُعۡرَضُونَ عَلَيۡهَا غُدُوّٗا وَعَشِيّٗاۚ وَيَوۡمَ تَقُومُ ٱلسَّاعَةُ أَدۡخِلُوٓاْ ءَالَ فِرۡعَوۡنَ أَشَدَّ ٱلۡعَذَابِ ﴿٤٦﴾ |
| **47.** ಅವರು ನರಕದಲ್ಲಿ ಪರಸ್ಪರ ತರ್ಕಿಸುವ ಸಂದರ್ಭ. ಆಗ ಬಲಹೀನರು ಅಹಂಕಾರಿಗಳೊಡನೆ ಹೇಳುವರು: “ನಿಶ್ಚಯವಾಗಿಯೂ ನಾವು ನಿಮ್ಮನ್ನು ಹಿಂಬಾಲಿಸಿದೆವು. ಆದ್ದರಿಂದ ನರಕ ಶಿಕ್ಷೆಯ ಒಂದು ಪಾಲನ್ನು ನಮ್ಮಿಂದ | وَإِذۡ يَتَحَآجُّونَ فِي ٱلنَّارِ فَيَقُولُ ٱلضُّعَفَٰٓؤُاْ لِلَّذِينَ ٱسۡتَكۡبَرُوٓاْ إِنَّا كُنَّا لَكُمۡ تَبَعٗا فَهَلۡ أَنتُم مُّغۡنُونَ عَنَّا نَصِيبٗا مِّنَ ٱلنَّارِ ﴿٤٧﴾ |

[1] ಬರ್ಝಖ್ (ಸತ್ತ ನಂತರ ಪುನರುತ್ಥಾನ ದಿನದ ತನಕವಿರುವ ಅವಧಿ) ನಲ್ಲಿ ಇವರಿಗೆ ದಿನನಿತ್ಯ ಬೆಳಗ್ಗೆ ಮತ್ತು ಸಂಜೆ ನರಕವನ್ನು ತೋರಿಸಲಾಗುವುದು. ಸಮಾಧಿಯಲ್ಲಿ ಸತ್ಯನಿಷೇಧಿಗಳನ್ನು ಶಿಕ್ಷಿಸಲಾಗುತ್ತದೆ ಎಂಬುದಕ್ಕೆ ಈ ವಚನವು ಪುರಾವೆಯಾಗಿದೆ.

ದೂರೀಕರಿಸಲು ನಿಮಗೆ ಸಾಧ್ಯವೇ?”

---

48. ಅಹಂಕಾರಿಗಳು ಹೇಳುವರು: “ನಾವೆಲ್ಲರೂ ನರಕದಲ್ಲಿದ್ದೇವೆ. ನಿಶ್ಚಯವಾಗಿಯೂ ಅಲ್ಲಾಹು ಅವನ ದಾಸರ ನಡುವೆ ತೀರ್ಪು ನೀಡಿದ್ದಾನೆ!”

قَالَ ٱلَّذِينَ ٱسْتَكْبَرُوٓا۟ إِنَّا كُلٌّ فِيهَآ إِنَّ ٱللَّهَ قَدْ
حَكَمَ بَيْنَ ٱلْعِبَادِ ﴿٤٨﴾

---

49. ನರಕದಲ್ಲಿರುವವರು ನರಕದ ಕಾವಲುಗಾರರೊಡನೆ ಹೇಳುವರು: “ನೀವು ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಕರೆದು ಪ್ರಾರ್ಥಿಸಿರಿ! ಅವನು ನಮಗೆ ಒಂದು ದಿನದ ಮಟ್ಟಿಗಾದರೂ ಶಿಕ್ಷೆಯಲ್ಲಿ ರಿಯಾಯಿತಿ ನೀಡಲಿ.”

وَقَالَ ٱلَّذِينَ فِى ٱلنَّارِ لِخَزَنَةِ جَهَنَّمَ ٱدْعُوا۟
رَبَّكُمْ يُخَفِّفْ عَنَّا يَوْمًا مِّنَ ٱلْعَذَابِ ﴿٤٩﴾

---

50. ಕಾವಲುಗಾರರು ಕೇಳುವರು: “ನಿಮ್ಮ ಬಳಿಗೆ ಸ್ಪಷ್ಟ ಸಾಕ್ಷ್ಯಾಧಾರ-ಗಳೊಂದಿಗೆ ಸಂದೇಶವಾಹಕರುಗಳು ಬಂದಿರಲಿಲ್ಲವೇ?” ಅವರು ಉತ್ತರಿಸುವರು: “ಹೌದು.” ಕಾವಲುಗಾರರು ಹೇಳುವರು: “ಹಾಗಾದರೆ ನೀವೇ ಕರೆದು ಪ್ರಾರ್ಥಿಸಿ. ಸತ್ಯನಿಷೇಧಿಗಳ ಪ್ರಾರ್ಥನೆಯು ವ್ಯರ್ಥವಲ್ಲದೆ ಇನ್ನೇನೂ ಅಲ್ಲ.”

قَالُوٓا۟ أَوَلَمْ تَكُ تَأْتِيكُمْ رُسُلُكُم بِٱلْبَيِّنَـٰتِ ۖ
قَالُوا۟ بَلَىٰ ۚ قَالُوا۟ فَٱدْعُوا۟ ۗ وَمَا دُعَـٰٓؤُا۟ ٱلْكَـٰفِرِينَ
إِلَّا فِى ضَلَـٰلٍ ﴿٥٠﴾

---

51. ನಿಶ್ಚಯವಾಗಿಯೂ ನಾವು ನಮ್ಮ ಸಂದೇಶವಾಹಕರುಗಳಿಗೆ ಮತ್ತು ಸತ್ಯವಿಶ್ವಾಸಿಗಳಿಗೆ ಇಹಲೋಕದಲ್ಲೂ, ಸಾಕ್ಷಿಗಳು ಎದ್ದು ನಿಲ್ಲುವ ದಿನದಲ್ಲೂ (ಪುನರುತ್ಥಾನ ದಿನದಲ್ಲೂ) ಸಹಾಯ ಮಾಡುವೆವು.

إِنَّا لَنَنصُرُ رُسُلَنَا وَٱلَّذِينَ ءَامَنُوا۟ فِى ٱلْحَيَوٰةِ
ٱلدُّنْيَا وَيَوْمَ يَقُومُ ٱلْأَشْهَـٰدُ ﴿٥١﴾

---

52. ಅಕ್ರಮಿಗಳಿಗೆ ಅವರ ನೆಪಗಳು ಉಪಕಾರ ಮಾಡದ ದಿನ! ಅವರಿಗೆ ಶಾಪವಿದೆ ಮತ್ತು ಅವರಿಗೆ ನಿಕೃಷ್ಟ ಭವನವಿದೆ.

يَوْمَ لَا يَنفَعُ ٱلظَّـٰلِمِينَ مَعْذِرَتُهُمْ ۖ وَلَهُمُ ٱللَّعْنَةُ
وَلَهُمْ سُوٓءُ ٱلدَّارِ ﴿٥٢﴾

---

53. ನಾವು ಮೂಸಾರಿಗೆ ಸನ್ಮಾರ್ಗವನ್ನು ನೀಡಿದೆವು ಮತ್ತು ಇಸ್ರಾಯೇಲ್ ಮಕ್ಕಳನ್ನು ಗ್ರಂಥದ ವಾರಸುದಾರರಾಗಿ ಮಾಡಿದೆವು.

وَلَقَدْ ءَاتَيْنَا مُوسَى ٱلْهُدَىٰ وَأَوْرَثْنَا بَنِىٓ
إِسْرَٰٓءِيلَ ٱلْكِتَـٰبَ ﴿٥٣﴾

---

54. ಅದು ಬುದ್ಧಿವಂತರಿಗೆ ಸನ್ಮಾರ್ಗದರ್ಶಿ ಮತ್ತು ಉಪದೇಶವಾಗಿತ್ತು.

هُدًى وَذِكْرَىٰ لِأُو۟لِى ٱلْأَلْبَـٰبِ ﴿٥٤﴾

---

55. ಆದ್ದರಿಂದ ನೀವು ತಾಳ್ಮೆಯಿಂದಿರಿ. ನಿಶ್ಚಯವಾಗಿಯೂ ಅಲ್ಲಾಹನ ವಾಗ್ದಾನವು ಸತ್ಯವಾಗಿದೆ. ನಿಮ್ಮ ತಪ್ಪಿಗಾಗಿ ಕ್ಷಮೆಯಾಚಿಸಿರಿ. ಸಂಜೆ ಹಾಗೂ ಮುಂಜಾನೆ ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಸ್ತುತಿಸುತ್ತಾ ಅವರ ಪರಿಶುದ್ಧಿಯನ್ನು ಕೊಂಡಾಡಿರಿ.

فَٱصْبِرْ إِنَّ وَعْدَ ٱللَّهِ حَقٌّ وَٱسْتَغْفِرْ لِذَنۢبِكَ
وَسَبِّحْ بِحَمْدِ رَبِّكَ بِٱلْعَشِىِّ وَٱلْإِبْكَـٰرِ ﴿٥٥﴾

---

56. ನಿಶ್ಚಯವಾಗಿಯೂ ತಮ್ಮ ಬಳಿಗೆ ಬಂದ ಯಾವುದೇ ಸ್ಪಷ್ಟ ಪುರಾವೆಯಿಲ್ಲದೆ ಅಲ್ಲಾಹನ ವಚನಗಳ ವಿಷಯದಲ್ಲಿ ತರ್ಕಿಸುವವರು ಯಾರೋ ಅವರ ಹೃದಯಗಳಲ್ಲಿ ಅಹಂಕಾರವಲ್ಲದೆ ಬೇರೇನೂ ಇಲ್ಲ. ಅವರು ಅಲ್ಲಿಗೆ

إِنَّ ٱلَّذِينَ يُجَـٰدِلُونَ فِىٓ ءَايَـٰتِ ٱللَّهِ بِغَيْرِ
سُلْطَـٰنٍ أَتَىٰهُمْ ۙ إِن فِى صُدُورِهِمْ إِلَّا
كِبْرٌ مَّا هُم بِبَـٰلِغِيهِ ۚ فَٱسْتَعِذْ بِٱللَّهِ ۖ إِنَّهُۥ

ತಲುಪುವುದೂ ಇಲ್ಲ.[1] ಆದ್ದರಿಂದ ನೀವು ಅಲ್ಲಾಹನಲ್ಲಿ ಅಭಯ ಯಾಚಿಸಿರಿ. ನಿಶ್ಚಯವಾಗಿಯೂ ಅವನು ಎಲ್ಲವನ್ನು ಕೇಳುವವನು ಮತ್ತು ನೋಡುವವನಾಗಿದ್ದಾನೆ. | هُوَ ٱلسَّمِيعُ ٱلْبَصِيرُ ٥٦

57. ನಿಶ್ಚಯವಾಗಿಯೂ ಭೂಮ್ಯಾಕಾಶಗಳ ಸೃಷ್ಟಿಯು ಮನುಷ್ಯನನ್ನು ಸೃಷ್ಟಿಸುವುದಕ್ಕಿಂತಲೂ ಎಷ್ಟೋ ದೊಡ್ಡದಾಗಿದೆ. ಆದರೆ ಜನರಲ್ಲಿ ಹೆಚ್ಚಿನವರು ಅರ್ಥಮಾಡಿಕೊಳ್ಳುವುದಿಲ್ಲ. | لَخَلْقُ ٱلسَّمَٰوَٰتِ وَٱلْأَرْضِ أَكْبَرُ مِنْ خَلْقِ ٱلنَّاسِ وَلَٰكِنَّ أَكْثَرَ ٱلنَّاسِ لَا يَعْلَمُونَ ٥٧

58. ಕಣ್ಣು ಕಾಣುವವನು ಮತ್ತು ಕಣ್ಣು ಕಾಣದವನು ಸಮಾನರಲ್ಲ. ಸತ್ಯವಿಶ್ವಾಸವಿಟ್ಟು ಸತ್ಕರ್ಮವೆಸಗಿದವರು ಮತ್ತು ದುಷ್ಕರ್ಮ-ವೆಸಗಿದವರು ಸಮಾನರಲ್ಲ. ನೀವು ಸ್ವಲ್ಪವೇ ಉಪದೇಶವನ್ನು ಸ್ವೀಕರಿಸುತ್ತೀರಿ. | وَمَا يَسْتَوِى ٱلْأَعْمَىٰ وَٱلْبَصِيرُ وَٱلَّذِينَ ءَامَنُوا۟ وَعَمِلُوا۟ ٱلصَّٰلِحَٰتِ وَلَا ٱلْمُسِىٓءُ ۚ قَلِيلًا مَّا تَتَذَكَّرُونَ ٥٨

59. ನಿಶ್ಚಯವಾಗಿಯೂ ಅಂತ್ಯಸಮಯವು ಬಂದೇ ಬರುತ್ತದೆ. ಅದರಲ್ಲಿ ಸಂಶಯವೇ ಇಲ್ಲ. ಆದರೆ ಜನರಲ್ಲಿ ಹೆಚ್ಚಿನವರು ವಿಶ್ವಾಸವಿಡುವುದಿಲ್ಲ. | إِنَّ ٱلسَّاعَةَ لَءَاتِيَةٌ لَّا رَيْبَ فِيهَا وَلَٰكِنَّ أَكْثَرَ ٱلنَّاسِ لَا يُؤْمِنُونَ ٥٩

60. ನಿಮ್ಮ ಪರಿಪಾಲಕನು (ಅಲ್ಲಾಹು) ಹೇಳಿದ್ದಾನೆ: “ನೀವು ನನ್ನನ್ನು ಕರೆದು ಪ್ರಾರ್ಥಿಸಿರಿ. ನಾನು ನಿಮಗೆ ಉತ್ತರ ನೀಡುತ್ತೇನೆ. ನಿಶ್ಚಯವಾಗಿಯೂ ನನ್ನನ್ನು ಆರಾಧಿಸುವ ವಿಷಯದಲ್ಲಿ ಅಹಂಕಾರ ತೋರುವವರು ಯಾರೋ ಅವರು ಸದ್ಯವೇ ಅವಮಾನಿತರಾಗಿ ನರಕವನ್ನು ಪ್ರವೇಶಿಸುವರು.”[2] | وَقَالَ رَبُّكُمُ ٱدْعُونِىٓ أَسْتَجِبْ لَكُمْ ۚ إِنَّ ٱلَّذِينَ يَسْتَكْبِرُونَ عَنْ عِبَادَتِى سَيَدْخُلُونَ جَهَنَّمَ دَاخِرِينَ ٦٠

61. ಅಲ್ಲಾಹು ನಿಮಗೆ ರಾತ್ರಿಯನ್ನು ವಿಶ್ರಾಂತಿ ಪಡೆಯಲು ಮತ್ತು ಹಗಲನ್ನು ಪ್ರಕಾಶಮಾನವಾಗಿ ಮಾಡಿಕೊಟ್ಟನು. ನಿಶ್ಚಯವಾಗಿಯೂ ಅಲ್ಲಾಹನಿಗೆ ಜನರೊಡನೆ ಅತ್ಯಂತ ಔದಾರ್ಯವಿದೆ. ಆದರೆ ಜನರಲ್ಲಿ ಹೆಚ್ಚಿನವರು ಕೃತಜ್ಞರಾಗುವುದಿಲ್ಲ. | ٱللَّهُ ٱلَّذِى جَعَلَ لَكُمُ ٱلَّيْلَ لِتَسْكُنُوا۟ فِيهِ وَٱلنَّهَارَ مُبْصِرًا ۚ إِنَّ ٱللَّهَ لَذُو فَضْلٍ عَلَى ٱلنَّاسِ وَلَٰكِنَّ أَكْثَرَ ٱلنَّاسِ لَا يَشْكُرُونَ ٦١

62. ಅವನೇ ನಿಮ್ಮ ಪರಿಪಾಲಕನಾದ ಅಲ್ಲಾಹು. ಅವನು ಎಲ್ಲಾ ವಸ್ತುಗಳ ಸೃಷ್ಟಿಕರ್ತನು. ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ಆದರೂ ನೀವು (ಸನ್ಮಾರ್ಗದಿಂದ) ತಪ್ಪಿಸಲ್ಪಡುವುದು ಹೇಗೆ? | ذَٰلِكُمُ ٱللَّهُ رَبُّكُمْ خَٰلِقُ كُلِّ شَىْءٍ لَّآ إِلَٰهَ إِلَّا هُوَ ۖ فَأَنَّىٰ تُؤْفَكُونَ ٦٢

63. ಈ ರೀತಿ ಅಲ್ಲಾಹನ ವಚನಗಳನ್ನು ನಿಷೇಧಿಸಿದವರು (ಸನ್ಮಾರ್ಗದಿಂದ) ತಪ್ಪಿ ಹೋಗುತ್ತಿದ್ದಾರೆ. | كَذَٰلِكَ يُؤْفَكُ ٱلَّذِينَ كَانُوا۟ بِـَٔايَٰتِ ٱللَّهِ يَجْحَدُونَ ٦٣

---

[1] ಅಂದರೆ ಸತ್ಯವು ನಾಶವಾಗಬೇಕು ಮತ್ತು ಅಸತ್ಯವು ರಾರಾಜಿಸಬೇಕೆಂಬ ಅವರ ಉದ್ದೇಶವು ಈಡೇರುವುದಿಲ್ಲ.

[2] ಪ್ರಾರ್ಥನೆ ಆರಾಧನೆಯಾಗಿದೆ ಮತ್ತು ಅದು ಅಲ್ಲಾಹನಿಗೆ ಮಾತ್ರ ಸಲ್ಲತಕ್ಕದ್ದೆಂದು ಈ ವಚನವು ತಿಳಿಸುತ್ತದೆ.

64. ಅಲ್ಲಾಹು ನಿಮಗೋಸ್ಕರ ಭೂಮಿಯನ್ನು ವಾಸಸ್ಥಳವನ್ನಾಗಿ ಮತ್ತು ಆಕಾಶವನ್ನು ಮೇಲ್ಛಾವಣಿಯನ್ನಾಗಿ ಮಾಡಿಕೊಟ್ಟನು. ಅವನು ನಿಮಗೆ ರೂಪವನ್ನು ನೀಡಿದನು. ನಂತರ ನಿಮ್ಮ ರೂಪಗಳನ್ನು ಉತ್ತಮಗೊಳಿಸಿದನು. ಅವನು ನಿಮಗೆ ಉಪಜೀವನವಾಗಿ ಅತ್ಯುತ್ತಮ ವಸ್ತುಗಳನ್ನು ಒದಗಿಸಿದನು. ಅವನೇ ನಿಮ್ಮ ಪರಿಪಾಲಕನಾದ ಅಲ್ಲಾಹು. ಆದ್ದರಿಂದ ಸರ್ವಲೋಕಗಳ ಪರಿಪಾಲಕನಾದ ಅಲ್ಲಾಹು ಸಮೃದ್ಧಪೂರ್ಣನಾಗಿದ್ದಾನೆ.

ٱللَّهُ ٱلَّذِى جَعَلَ لَكُمُ ٱلْأَرْضَ قَرَارًا وَٱلسَّمَآءَ بِنَآءً وَصَوَّرَكُمْ فَأَحْسَنَ صُوَرَكُمْ وَرَزَقَكُم مِّنَ ٱلطَّيِّبَٰتِ ۚ ذَٰلِكُمُ ٱللَّهُ رَبُّكُمْ ۖ فَتَبَارَكَ ٱللَّهُ رَبُّ ٱلْعَٰلَمِينَ ﴿٦٤﴾

65. ಅವನು ಜೀವಂತವಿರುವವನು. ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ಆದ್ದರಿಂದ ನಿಷ್ಕಳಂಕವಾಗಿ ಅವನನ್ನು ಆರಾಧಿಸುತ್ತಾ ಅವನನ್ನು ಕರೆದು ಪ್ರಾರ್ಥಿಸಿರಿ. ಸರ್ವಲೋಕಗಳ ಪರಿಪಾಲಕನಾದ ಅಲ್ಲಾಹನಿಗೆ ಸರ್ವಸ್ತುತಿ.

هُوَ ٱلْحَىُّ لَآ إِلَٰهَ إِلَّا هُوَ فَٱدْعُوهُ مُخْلِصِينَ لَهُ ٱلدِّينَ ۗ ٱلْحَمْدُ لِلَّهِ رَبِّ ٱلْعَٰلَمِينَ ﴿٦٥﴾

66. ಹೇಳಿರಿ: "ನನ್ನ ಪರಿಪಾಲಕನ (ಅಲ್ಲಾಹನ) ಕಡೆಯಿಂದ ನನಗೆ ಸಾಕ್ಷ್ಯಾಧಾರಗಳು ತಲುಪಿರುವುದರಿಂದ, ಅಲ್ಲಾಹನನ್ನು ಬಿಟ್ಟು ನೀವು ಕರೆದು ಪ್ರಾರ್ಥಿಸುತ್ತಿರುವ ದೇವರುಗಳನ್ನು ಆರಾಧಿಸಬಾರದೆಂದು ನನಗೆ ವಿರೋಧಿಸಲಾಗಿದೆ. ಸರ್ವಲೋಕಗಳ ಪರಿಪಾಲಕನಿಗೆ (ಅಲ್ಲಾಹನಿಗೆ) ಶರಣಾಗಬೇಕೆಂದು ನನಗೆ ಆಜ್ಞಾಪಿಸಲಾಗಿದೆ."

قُلْ إِنِّى نُهِيتُ أَنْ أَعْبُدَ ٱلَّذِينَ تَدْعُونَ مِن دُونِ ٱللَّهِ لَمَّا جَآءَنِىَ ٱلْبَيِّنَٰتُ مِن رَّبِّى وَأُمِرْتُ أَنْ أُسْلِمَ لِرَبِّ ٱلْعَٰلَمِينَ ﴿٦٦﴾

67. ಅವನೇ ನಿಮ್ಮನ್ನು ಮಣ್ಣಿನಿಂದ, ನಂತರ ವೀರ್ಯದಿಂದ, ನಂತರ ಭ್ರೂಣದಿಂದ ಸೃಷ್ಟಿಸಿದವನು. ನಂತರ ಅವನು ನಿಮ್ಮನ್ನು ಒಂದು ಶಿಶುವನ್ನಾಗಿ ಹೊರತರುವನು. ನಂತರ ನೀವು ನಿಮ್ಮ ಪೂರ್ಣ ಯೌವನವನ್ನು ತಲುಪಿ, ನಂತರ ನೀವು ಮುದುಕ-ರಾಗುವುದಕ್ಕಾಗಿ (ಅವನು ನಿಮ್ಮನ್ನು ಬೆಳೆಸುತ್ತಾನೆ). ನಿಮ್ಮಲ್ಲಿ ಕೆಲವರು ಇದಕ್ಕೆ ಮೊದಲೇ ಮರಣವನ್ನಪ್ಪುತ್ತಾರೆ. ನೀವು ನಿಮ್ಮ ನಿಶ್ಚಿತ ಅವಧಿಯನ್ನು ತಲುಪುವುದಕ್ಕಾಗಿ (ಅವನು ನಿಮ್ಮನ್ನು ಬಿಟ್ಟುಬಿಡುತ್ತಾನೆ). ನೀವು ಆಲೋಚಿಸುವುದಕ್ಕಾಗಿ.

هُوَ ٱلَّذِى خَلَقَكُم مِّن تُرَابٍ ثُمَّ مِن نُّطْفَةٍ ثُمَّ مِنْ عَلَقَةٍ ثُمَّ يُخْرِجُكُمْ طِفْلًا ثُمَّ لِتَبْلُغُوٓا۟ أَشُدَّكُمْ ثُمَّ لِتَكُونُوا۟ شُيُوخًا ۚ وَمِنكُم مَّن يُتَوَفَّىٰ مِن قَبْلُ ۖ وَلِتَبْلُغُوٓا۟ أَجَلًا مُّسَمًّى وَلَعَلَّكُمْ تَعْقِلُونَ ﴿٦٧﴾

68. ಅವನೇ ಜೀವ ಮತ್ತು ಮರಣವನ್ನು ನೀಡುವವನು. ಅವನು ಒಂದು ವಿಷಯವನ್ನು ತೀರ್ಮಾನಿಸಿದರೆ, ಅದರೊಂದಿಗೆ "ಉಂಟಾಗು" ಎನ್ನುತ್ತಾನೆ. ತಕ್ಷಣ ಅದು ಉಂಟಾಗುತ್ತದೆ!

هُوَ ٱلَّذِى يُحْىِۦ وَيُمِيتُ ۖ فَإِذَا قَضَىٰٓ أَمْرًا فَإِنَّمَا يَقُولُ لَهُۥ كُن فَيَكُونُ ﴿٦٨﴾

69. ಅಲ್ಲಾಹನ ವಚನಗಳ ವಿಷಯದಲ್ಲಿ ತರ್ಕಿಸುವವರನ್ನು ನೀವು ನೋಡಿಲ್ಲವೇ? ಅವರು ತಿರುಗಿಸಲ್ಪಡುತ್ತಿರುವುದು ಹೇಗೆ?

أَلَمْ تَرَ إِلَى ٱلَّذِينَ يُجَٰدِلُونَ فِىٓ ءَايَٰتِ ٱللَّهِ أَنَّىٰ يُصْرَفُونَ ﴿٦٩﴾

70. ಅವರು ಗ್ರಂಥವನ್ನು ಮತ್ತು ನಾವು ನಮ್ಮ

ٱلَّذِينَ كَذَّبُوا۟ بِٱلْكِتَٰبِ وَبِمَآ أَرْسَلْنَا بِهِۦ

| | | |
|---|---|---|
| | ಸಂದೇಶವಾಹಕರೊಡನೆ ಕಳುಹಿಸಿರುವುದನ್ನು ನಿಷೇಧಿಸಿದ್ದಾರೆ. ಅವರು ಸದ್ಯವೇ ತಿಳಿಯುವರು. | رُسُلَنَا ۖ فَسَوْفَ يَعْلَمُونَ ﴿٧٠﴾ |
| 71. | ಅವರ ಕೊರಳುಗಳಲ್ಲಿ ಬೇಡಿಗಳು ಮತ್ತು ಸಂಕೋಲೆಗಳಿರುವ ಸ್ಥಿತಿಯಲ್ಲಿ ಅವರನ್ನು ಎಳೆದೊಯ್ಯಲಾಗುವುದು. | إِذِ ٱلْأَغْلَٰلُ فِىٓ أَعْنَٰقِهِمْ وَٱلسَّلَٰسِلُ يُسْحَبُونَ ﴿٧١﴾ |
| 72. | ಕುದಿಯುವ ನೀರಿನಲ್ಲಿ. ನಂತರ ಅವರನ್ನು ನರಕಾಗ್ನಿಯಲ್ಲಿ ಉರಿಸಲಾಗುವುದು. | فِى ٱلْحَمِيمِ ثُمَّ فِى ٱلنَّارِ يُسْجَرُونَ ﴿٧٢﴾ |
| 73. | ನಂತರ ಅವರೊಂದಿಗೆ ಕೇಳಲಾಗುವುದು: "ನೀವು (ಅಲ್ಲಾಹನಿಗೆ) ಸಹಭಾಗಿಗಳನ್ನಾಗಿ ಮಾಡಿದವರು (ನಿಮ್ಮ ದೇವರುಗಳು) ಎಲ್ಲಿದ್ದಾರೆ? | ثُمَّ قِيلَ لَهُمْ أَيْنَ مَا كُنتُمْ تُشْرِكُونَ ﴿٧٣﴾ |
| 74. | ಅಲ್ಲಾಹನನ್ನು ಬಿಟ್ಟು." ಅವರು ಹೇಳುವರು: "ಅವರು ನಮ್ಮನ್ನು ತೊರೆದಿದ್ದಾರೆ. ಅಲ್ಲ, ವಾಸ್ತವವಾಗಿ ನಾವು ಇದಕ್ಕೆ ಮೊದಲು ಯಾರನ್ನೂ ಕರೆದು ಪ್ರಾರ್ಥಿಸುತ್ತಿರಲಿಲ್ಲ." ಈ ರೀತಿ ಅಲ್ಲಾಹು ಸತ್ಯನಿಷೇಧಿಗಳನ್ನು ದಾರಿತಪ್ಪಿಸುವನು. | مِن دُونِ ٱللَّهِ ۖ قَالُوا۟ ضَلُّوا۟ عَنَّا بَل لَّمْ نَكُن نَّدْعُوا۟ مِن قَبْلُ شَيْـًٔا ۚ كَذَٰلِكَ يُضِلُّ ٱللَّهُ ٱلْكَٰفِرِينَ ﴿٧٤﴾ |
| 75. | (ಅವರೊಡನೆ ಹೇಳಲಾಗುವುದು): "ಈ ಶಿಕ್ಷೆಯು ಏಕೆಂದರೆ ನೀವು ಭೂಮಿಯಲ್ಲಿ ಅನ್ಯಾಯವಾಗಿ ಮೆರೆಯುತ್ತಿದ್ದಿರಿ ಮತ್ತು ಅಹಂಕಾರದಿಂದ ವರ್ತಿಸುತ್ತಿದ್ದಿರಿ. | ذَٰلِكُم بِمَا كُنتُمْ تَفْرَحُونَ فِى ٱلْأَرْضِ بِغَيْرِ ٱلْحَقِّ وَبِمَا كُنتُمْ تَمْرَحُونَ ﴿٧٥﴾ |
| 76. | ನರಕದ ಬಾಗಿಲುಗಳನ್ನು ಅದರಲ್ಲಿ ಶಾಶ್ವತವಾಗಿ ವಾಸಿಸುವುದಕ್ಕಾಗಿ ಪ್ರವೇಶಿಸಿರಿ. ಅಹಂಕಾರಿಗಳ ವಾಸಸ್ಥಳವು ಬಹಳ ನಿಕೃಷ್ಟವಾಗಿದೆ!" | ٱدْخُلُوٓا۟ أَبْوَٰبَ جَهَنَّمَ خَٰلِدِينَ فِيهَا ۖ فَبِئْسَ مَثْوَى ٱلْمُتَكَبِّرِينَ ﴿٧٦﴾ |
| 77. | ನೀವು ತಾಳ್ಮೆಯಿಂದಿರಿ. ನಿಶ್ಚಯವಾಗಿಯೂ ಅಲ್ಲಾಹನ ವಾಗ್ದಾನವು ಸತ್ಯವಾಗಿದೆ. ನಾವು ಅವರಿಗೆ ವಾಗ್ದಾನ ಮಾಡುವ ಶಿಕ್ಷೆಗಳಲ್ಲಿ ಕೆಲವನ್ನು ನಾವು ನಿಮಗೆ ತೋರಿಸಿಕೊಟ್ಟರೂ ಅಥವಾ (ಅದಕ್ಕಿಂತ ಮೊದಲೇ) ನಾವು ನಿಮ್ಮನ್ನು ಮೃತಪಡಿಸಿದರೂ ಅವರು ಮರಳಿ ಬರುವುದು ನಮ್ಮ ಬಳಿಗೇ ಆಗಿದೆ. | فَٱصْبِرْ إِنَّ وَعْدَ ٱللَّهِ حَقٌّ ۚ فَإِمَّا نُرِيَنَّكَ بَعْضَ ٱلَّذِى نَعِدُهُمْ أَوْ نَتَوَفَّيَنَّكَ فَإِلَيْنَا يُرْجَعُونَ ﴿٧٧﴾ |
| 78. | ನಿಮಗಿಂತ ಮುಂಚೆ ನಾವು ಅನೇಕ ಸಂದೇಶವಾಹಕರುಗ-ಳನ್ನು ಕಳುಹಿಸಿದ್ದೇವೆ. ಅವರಲ್ಲಿ ಕೆಲವರ (ಸಮಾಚಾರಗಳನ್ನು) ನಾವು ನಿಮಗೆ ವಿವರಿಸಿದ್ದೇವೆ. ಅವರಲ್ಲಿ ಬೇರೆ ಕೆಲವರ ಬಗ್ಗೆ ನಾವು ನಿಮಗೆ ವಿವರಿಸಿಲ್ಲ. ಅಲ್ಲಾಹನ ಅಪ್ಪಣೆಯಿಲ್ಲದೆ ಒಂದು ದೃಷ್ಟಾಂತವನ್ನು ತರಲು ಯಾವುದೇ ಸಂದೇಶವಾಹಕರಿಗೂ ಸಾಧ್ಯವಿಲ್ಲ. ನಂತರ ಅಲ್ಲಾಹನ ಆಜ್ಞೆ ಬರುವಾಗ ನ್ಯಾಯಯುತವಾಗಿ ತೀರ್ಪು ನೀಡಲಾಗುವುದು. ಅಲ್ಲಿ | وَلَقَدْ أَرْسَلْنَا رُسُلًا مِّن قَبْلِكَ مِنْهُم مَّن قَصَصْنَا عَلَيْكَ وَمِنْهُم مَّن لَّمْ نَقْصُصْ عَلَيْكَ ۗ وَمَا كَانَ لِرَسُولٍ أَن يَأْتِىَ بِـَٔايَةٍ إِلَّا بِإِذْنِ ٱللَّهِ ۚ فَإِذَا جَآءَ أَمْرُ ٱللَّهِ قُضِىَ بِٱلْحَقِّ وَخَسِرَ هُنَالِكَ ٱلْمُبْطِلُونَ ﴿٧٨﴾ |

ಮಿಥ್ಯವಾದಿಗಳು ನಷ್ಟ ಹೊಂದಿದವರಾಗುವರು.

79. ನಿಮಗಾಗಿ ಜಾನುವಾರುಗಳನ್ನು ಸೃಷ್ಟಿಸಿದವನು ಅಲ್ಲಾಹು. ಅವುಗಳಲ್ಲಿ ಕೆಲವು ಪ್ರಾಣಿಗಳ ಮೇಲೆ ನೀವು ಸವಾರಿ ಮಾಡುತ್ತೀರಿ ಮತ್ತು ಅವುಗಳಲ್ಲಿ ಕೆಲವನ್ನು ನೀವು ತಿನ್ನುತ್ತೀರಿ.

ٱللَّهُ ٱلَّذِى جَعَلَ لَكُمُ ٱلْأَنْعَٰمَ لِتَرْكَبُوا۟ مِنْهَا وَمِنْهَا تَأْكُلُونَ ﴿٧٩﴾

80. ಅವುಗಳಲ್ಲಿ ನಿಮಗೆ ಇನ್ನೂ ಅನೇಕ ಉಪಯೋಗಗಳಿವೆ. ನೀವು ಅವುಗಳ ಮೇಲೆ ಸವಾರಿ ಮಾಡಿ ನಿಮ್ಮ ಮನಸ್ಸಿನಲ್ಲಿರುವ ಅಗತ್ಯಗಳನ್ನು ತಲುಪುತ್ತೀರಿ. ನಿಮ್ಮನ್ನು ಅವುಗಳ ಬೆನ್ನುಗಳಲ್ಲೂ, ನಾವೆಗಳಲ್ಲೂ ಸಾಗಿಸಲಾಗುತ್ತಿದೆ.

وَلَكُمْ فِيهَا مَنَٰفِعُ وَلِتَبْلُغُوا۟ عَلَيْهَا حَاجَةً فِى صُدُورِكُمْ وَعَلَيْهَا وَعَلَى ٱلْفُلْكِ تُحْمَلُونَ ﴿٨٠﴾

81. ಅವನು ನಿಮಗೆ ಅವನ ದೃಷ್ಟಾಂತಗಳನ್ನು ತೋರಿಸಿಕೊಡುತ್ತಾನೆ. ಅಲ್ಲಾಹನ ದೃಷ್ಟಾಂತಗಳಲ್ಲಿ ಯಾವುದನ್ನು ನೀವು ನಿಷೇಧಿಸುತ್ತೀರಿ?

وَيُرِيكُمْ ءَايَٰتِهِۦ فَأَىَّ ءَايَٰتِ ٱللَّهِ تُنكِرُونَ ﴿٨١﴾

82. ಅವರು ಭೂಮಿಯಲ್ಲಿ ಸಂಚರಿಸಿ ಅವರಿಗಿಂತ ಮೊದಲಿನವರ ಅಂತ್ಯವು ಹೇಗಿತ್ತೆಂದು ನೋಡುವುದಿಲ್ಲವೇ? ಅವರು ಜನಸಂಖ್ಯೆಯಲ್ಲಿ ಇವರಿಗಿಂತ ಹೆಚ್ಚಿದ್ದರು ಮತ್ತು ಶಕ್ತಿ-ಸಾಮರ್ಥ್ಯದಲ್ಲಿ ಹಾಗೂ ಭೂಮಿಯಲ್ಲಿ ಸ್ಮಾರಕಗಳನ್ನು ಬಿಟ್ಟುಹೋಗುವುದರಲ್ಲಿ ಇವರಿಗಿಂತ ಹೆಚ್ಚು ಶ್ರೇಷ್ಠರಾಗಿದ್ದರು. ಆದರೆ ಅವರ ಯಾವುದೇ ಕೆಲಸಗಳು ಅವರ ಉಪಯೋಗಕ್ಕೆ ಬರಲಿಲ್ಲ.

أَفَلَمْ يَسِيرُوا۟ فِى ٱلْأَرْضِ فَيَنظُرُوا۟ كَيْفَ كَانَ عَٰقِبَةُ ٱلَّذِينَ مِن قَبْلِهِمْ ۚ كَانُوٓا۟ أَكْثَرَ مِنْهُمْ وَأَشَدَّ قُوَّةً وَءَاثَارًا فِى ٱلْأَرْضِ فَمَآ أَغْنَىٰ عَنْهُم مَّا كَانُوا۟ يَكْسِبُونَ ﴿٨٢﴾

83. ಅವರ ಸಂದೇಶವಾಹಕರುಗಳು ಸ್ಪಷ್ಟ ಸಾಕ್ಷ್ಯಾಧಾರಗಳೊಂದಿಗೆ ಅವರ ಬಳಿಗೆ ಬಂದಾಗ, ಅವರು ತಮ್ಮ ಬಳಿಯಿರುವ ಜ್ಞಾನದ ಬಗ್ಗೆ ಹಿಗ್ಗುತ್ತಿದ್ದರು. ಕೊನೆಗೆ ಅವರು ಯಾವುದನ್ನು ತಮಾಷೆ ಮಾಡುತ್ತಿದ್ದರೋ ಆ ಶಿಕ್ಷೆಯು ಅವರನ್ನು ಆವರಿಸಿಕೊಂಡಿತು.

فَلَمَّا جَآءَتْهُمْ رُسُلُهُم بِٱلْبَيِّنَٰتِ فَرِحُوا۟ بِمَا عِندَهُم مِّنَ ٱلْعِلْمِ وَحَاقَ بِهِم مَّا كَانُوا۟ بِهِۦ يَسْتَهْزِءُونَ ﴿٨٣﴾

84. ನಮ್ಮ ಶಿಕ್ಷೆಯನ್ನು ಕಂಡಾಗ ಅವರು ಹೇಳಿದರು: “ನಾವು ಅಲ್ಲಾಹನಲ್ಲಿ ಮಾತ್ರ ವಿಶ್ವಾಸವಿಟ್ಟಿದ್ದೇವೆ ಮತ್ತು ಅವನೊಡನೆ ಸಹಭಾಗಿಯನ್ನಾಗಿ ಮಾಡುತ್ತಿದ್ದ (ಎಲ್ಲಾ ದೇವರುಗಳನ್ನು) ನಿಷೇಧಿಸಿದ್ದೇವೆ.”

فَلَمَّا رَأَوْا۟ بَأْسَنَا قَالُوٓا۟ ءَامَنَّا بِٱللَّهِ وَحْدَهُۥ وَكَفَرْنَا بِمَا كُنَّا بِهِۦ مُشْرِكِينَ ﴿٨٤﴾

85. ಆದರೆ ನಮ್ಮ ಶಿಕ್ಷೆಯನ್ನು ಕಂಡಾಗ ಅವರ ಆ ವಿಶ್ವಾಸವು ಅವರಿಗೆ ಪ್ರಯೋಜನವಾಗಲಿಲ್ಲ. ಇದು ಅಲ್ಲಾಹು ತನ್ನ ದಾಸರ ವಿಷಯದಲ್ಲಿ ಅನುಸರಿಸಿಕೊಂಡು ಬಂದ ಕ್ರಮವಾಗಿದೆ. ಅಲ್ಲಿ ಸತ್ಯನಿಷೇಧಿಗಳೇ ನಷ್ಟ ಹೊಂದಿದರು.

فَلَمْ يَكُ يَنفَعُهُمْ إِيمَٰنُهُمْ لَمَّا رَأَوْا۟ بَأْسَنَا ۖ سُنَّتَ ٱللَّهِ ٱلَّتِى قَدْ خَلَتْ فِى عِبَادِهِۦ ۖ وَخَسِرَ هُنَالِكَ ٱلْكَٰفِرُونَ ﴿٨٥﴾

# 41. ಫುಸ್ಸಿಲತ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ಹಾ-ಮೀಮ್. | حمٓ ١ |
| 2. | ಇದು ಪರಮ ದಯಾಳು ಮತ್ತು ಕರುಣಾನಿಧಿಯಾದ (ಅಲ್ಲಾಹನ) ಕಡೆಯಿಂದ ಅವತೀರ್ಣವಾಗಿದೆ. | تَنزِيلٞ مِّنَ ٱلرَّحۡمَٰنِ ٱلرَّحِيمِ ٢ |
| 3. | ಇದು ವಚನಗಳನ್ನು ವಿವರಿಸಿಕೊಡಲಾದ ಗ್ರಂಥವಾಗಿದೆ. ತಿಳುವಳಿಕೆಯಿರುವ ಜನರಿಗೆ ಅರಬ್ಬಿ ಭಾಷೆಯಲ್ಲಿರುವ ಕುರ್‌ಆನ್ ಆಗಿದೆ. | كِتَٰبٞ فُصِّلَتۡ ءَايَٰتُهُۥ قُرۡءَانًا عَرَبِيّٗا لِّقَوۡمٖ يَعۡلَمُونَ ٣ |
| 4. | ಇದು ಸುವಾರ್ತೆಯನ್ನು ತಿಳಿಸುವ ಮತ್ತು ಮುನ್ನೆಚ್ಚರಿಕೆ ನೀಡುವ (ಗ್ರಂಥವಾಗಿದೆ). ಆದರೆ ಅವರಲ್ಲಿ ಹೆಚ್ಚಿನವರು ವಿಮುಖರಾಗಿದ್ದಾರೆ. ಅವರು (ಇದಕ್ಕೆ) ಕಿವಿಗೊಡುವುದಿಲ್ಲ. | بَشِيرٗا وَنَذِيرٗا فَأَعۡرَضَ أَكۡثَرُهُمۡ فَهُمۡ لَا يَسۡمَعُونَ ٤ |
| 5. | ಅವರು ಹೇಳಿದರು: "ನೀವು ನಮ್ಮನ್ನು ಯಾವುದರ ಕಡೆಗೆ ಕರೆಯುತ್ತಿದ್ದೀರೋ (ಅದನ್ನು ಅರ್ಥಮಾಡಿಕೊಳ್ಳಲು ಸಾಧ್ಯವಾಗದ) ರೀತಿಯಲ್ಲಿ ನಮ್ಮ ಹೃದಯಗಳನ್ನು ಮುಚ್ಚಲಾಗಿವೆ. ನಮ್ಮ ಕಿವಿಗಳು ಕಿವುಡಾಗಿವೆ. ನಮ್ಮ ಮತ್ತು ನಿಮ್ಮ ನಡುವೆ ಒಂದು ಪರದೆಯಿದೆ. ಆದ್ದರಿಂದ ನೀವು ಕರ್ಮವೆಸಗಿರಿ. ನಾವು ಕೂಡ ಕರ್ಮವೆಸಗುತ್ತೇವೆ." | وَقَالُواْ قُلُوبُنَا فِيٓ أَكِنَّةٖ مِّمَّا تَدۡعُونَآ إِلَيۡهِ وَفِيٓ ءَاذَانِنَا وَقۡرٞ وَمِنۢ بَيۡنِنَا وَبَيۡنِكَ حِجَابٞ فَٱعۡمَلۡ إِنَّنَا عَٰمِلُونَ ٥ |
| 6. | ಹೇಳಿರಿ: "ನಾನು ನಿಮ್ಮಂತೆಯೇ ಇರುವ ಒಬ್ಬ ಮನುಷ್ಯ. ನಿಮ್ಮ ದೇವನು ಏಕೈಕ ದೇವನೆಂದು ನನಗೆ ದೇವವಾಣಿ ನೀಡಲಾಗುತ್ತಿದೆ. ಆದ್ದರಿಂದ ನೀವು ಅವನ ಕಡೆಗೆ ತಿರುಗಿರಿ ಮತ್ತು ಅವನಲ್ಲಿ ಕ್ಷಮೆಯಾಚಿಸಿರಿ." ಬಹುದೇವಾರಾಧಕರಿಗೆ ವಿನಾಶ ಕಾದಿದೆ. | قُلۡ إِنَّمَآ أَنَا۠ بَشَرٞ مِّثۡلُكُمۡ يُوحَىٰٓ إِلَيَّ أَنَّمَآ إِلَٰهُكُمۡ إِلَٰهٞ وَٰحِدٞ فَٱسۡتَقِيمُوٓاْ إِلَيۡهِ وَٱسۡتَغۡفِرُوهُۗ وَوَيۡلٞ لِّلۡمُشۡرِكِينَ ٦ |
| 7. | ಅಂದರೆ ಝಕಾತ್ ನೀಡದವರಿಗೆ. ಅವರು ಪರಲೋಕವನ್ನು ನಿಷೇಧಿಸುತ್ತಾರೆ. | ٱلَّذِينَ لَا يُؤۡتُونَ ٱلزَّكَوٰةَ وَهُم بِٱلۡأٓخِرَةِ هُمۡ كَٰفِرُونَ ٧ |
| 8. | ನಿಶ್ಚಯವಾಗಿಯೂ ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ ಅವರಿಗೆ ಅಂತ್ಯವಿಲ್ಲದ ಪ್ರತಿಫಲವಿದೆ. | إِنَّ ٱلَّذِينَ ءَامَنُواْ وَعَمِلُواْ ٱلصَّٰلِحَٰتِ لَهُمۡ أَجۡرٌ غَيۡرُ مَمۡنُونٖ ٨ |
| 9. | ಹೇಳಿರಿ: "ಎರಡು ದಿನಗಳಲ್ಲಿ ಭೂಮಿಯನ್ನು ಸೃಷ್ಟಿಸಿದ (ಅಲ್ಲಾಹನನ್ನು) ನೀವು ನಿಷೇಧಿಸುತ್ತೀರಾ ಮತ್ತು ಅವನೊಂದಿಗೆ ಸರಿಸಾಟಿಗಳನ್ನು ಮಾಡುತ್ತೀರಾ? ಅವನೇ ಸರ್ವಲೋಕಗಳ ಪರಿಪಾಲಕ." | قُلۡ أَئِنَّكُمۡ لَتَكۡفُرُونَ بِٱلَّذِي خَلَقَ ٱلۡأَرۡضَ فِي يَوۡمَيۡنِ وَتَجۡعَلُونَ لَهُۥٓ أَندَادٗاۚ ذَٰلِكَ رَبُّ ٱلۡعَٰلَمِينَ ٩ |

| | | |
|---|---|---|
| 10. | ಅವನು ಭೂಮಿಯಲ್ಲಿ—ಅದರ ಮೇಲ್ಭಾಗದಲ್ಲಿ—ಪರ್ವತಗಳನ್ನು ಸ್ಥಾಪಿಸಿದನು ಮತ್ತು ಅದರಲ್ಲಿ ಸಮೃದ್ಧಿಯನ್ನಿಟ್ಟನು. ಅದರಲ್ಲಿರುವ (ನಿವಾಸಿಗಳ) ಆಹಾರಗಳನ್ನು ಅದರಲ್ಲಿ ನಿರ್ಣಯಿಸಿದನು. (ಅವನು ಇದನ್ನು ಮಾಡಿದ್ದು ಕೇವಲ) ನಾಲ್ಕು ದಿನಗಳಲ್ಲಿ. ಅಗತ್ಯ-ವುಳ್ಳವರಿಗೆ ಸರಿಯಾದ ಪ್ರಮಾಣದಲ್ಲಿ. | وَجَعَلَ فِيهَا رَوَٰسِيَ مِن فَوۡقِهَا وَبَٰرَكَ فِيهَا وَقَدَّرَ فِيهَآ أَقۡوَٰتَهَا فِيٓ أَرۡبَعَةِ أَيَّامٖ سَوَآءٗ لِّلسَّآئِلِينَ ١٠ |
| 11. | ನಂತರ ಅವನು ಆಕಾಶದ ಕಡೆಗೆ ತಿರುಗಿದನು. ಅದು ಹೊಗೆಯಂತೆ ಇತ್ತು. ಅವನು ಅದರೊಂದಿಗೆ ಮತ್ತು ಭೂಮಿಯೊಂದಿಗೆ ಹೇಳಿದನು: "ನೀವು ಸ್ವಯಂಪ್ರೇರಣೆಯಿಂದ ಅಥವಾ ಬಲವಂತದಿಂದ ಬನ್ನಿರಿ." ಅವೆರಡೂ ಹೇಳಿದವು: "ನಾವು ಸ್ವಯಂಪ್ರೇರಣೆಯಿಂದ ಬಂದಿದ್ದೇವೆ." | ثُمَّ ٱسۡتَوَىٰٓ إِلَى ٱلسَّمَآءِ وَهِيَ دُخَانٞ فَقَالَ لَهَا وَلِلۡأَرۡضِ ٱئۡتِيَا طَوۡعًا أَوۡ كَرۡهٗا قَالَتَآ أَتَيۡنَا طَآئِعِينَ ١١ |
| 12. | ಅವನು ಎರಡು ದಿನಗಳಲ್ಲಿ ಏಳು ಆಕಾಶಗಳನ್ನು ನಿರ್ಮಿಸಿದನು. ಎಲ್ಲಾ ಆಕಾಶಗಳಿಗೂ ಅದರ ಕಾರ್ಯನಿರ್ವಹಣೆಯನ್ನು ಆದೇಶಿಸಿದನು. ನಾವು ಇಹಲೋಕದ ಆಕಾಶವನ್ನು ದೀಪಗಳಿಂದ ಅಲಂಕರಿಸಿದೆವು ಮತ್ತು ಸುರಕ್ಷಿತಗೊಳಿಸಿದೆವು. ಇದು ಪ್ರಬಲನು ಮತ್ತು ಸರ್ವಜ್ಞನಾದ ಅಲ್ಲಾಹನ ನಿರ್ಣಯವಾಗಿದೆ. | فَقَضَىٰهُنَّ سَبۡعَ سَمَٰوَاتٖ فِي يَوۡمَيۡنِ وَأَوۡحَىٰ فِي كُلِّ سَمَآءٍ أَمۡرَهَاۚ وَزَيَّنَّا ٱلسَّمَآءَ ٱلدُّنۡيَا بِمَصَٰبِيحَ وَحِفۡظٗاۚ ذَٰلِكَ تَقۡدِيرُ ٱلۡعَزِيزِ ٱلۡعَلِيمِ ١٢ |
| 13. | ಅವರೇನಾದರೂ ವಿಮುಖರಾಗುವುದಾದರೆ ಹೇಳಿರಿ: "ಆದ್ ಗೋತ್ರ ಮತ್ತು ಸಮೂದ್ ಗೋತ್ರಗಳ ಮೇಲೆರಗಿದ ಭೀಕರ ಶಿಕ್ಷೆಯಂತಿರುವ ಒಂದು ಶಿಕ್ಷೆಯ ಬಗ್ಗೆ ನಾನು ನಿಮಗೆ ಎಚ್ಚರಿಕೆ ನೀಡುತ್ತಿದ್ದೇನೆ." | فَإِنۡ أَعۡرَضُواْ فَقُلۡ أَنذَرۡتُكُمۡ صَٰعِقَةٗ مِّثۡلَ صَٰعِقَةِ عَادٖ وَثَمُودَ ١٣ |
| 14. | "ಅಲ್ಲಾಹನನ್ನು ಬಿಟ್ಟು ಬೇರೆ ಯಾರನ್ನೂ ಆರಾಧಿಸಬೇಡಿ" ಎಂದು ಹೇಳುತ್ತಾ ಅವರ ಮುಂದಿನಿಂದಲೂ ಹಿಂದಿನಿಂದಲೂ ಸಂದೇಶವಾಹಕರುಗಳು ಅವರ ಬಳಿಗೆ ಬಂದ ಸಂದರ್ಭ. ಅವರು ಹೇಳಿದರು: "ನಮ್ಮ ಪರಿಪಾಲಕನು (ಅಲ್ಲಾಹು) ಇಚ್ಛಿ-ಸುತ್ತಿದ್ದರೆ ದೇವದೂತರುಗಳನ್ನು ಕಳುಹಿಸುತ್ತಿದ್ದನು. ನಿಮ್ಮೊಡನೆ ಕಳುಹಿಸಲಾದ ಆ ಸಂದೇಶವನ್ನು ನಿಶ್ಚಯವಾಗಿಯೂ ನಾವು ನಿಷೇಧಿಸಿದ್ದೇವೆ." | إِذۡ جَآءَتۡهُمُ ٱلرُّسُلُ مِنۢ بَيۡنِ أَيۡدِيهِمۡ وَمِنۡ خَلۡفِهِمۡ أَلَّا تَعۡبُدُوٓاْ إِلَّا ٱللَّهَۖ قَالُواْ لَوۡ شَآءَ رَبُّنَا لَأَنزَلَ مَلَٰٓئِكَةٗ فَإِنَّا بِمَآ أُرۡسِلۡتُم بِهِۦ كَٰفِرُونَ ١٤ |
| 15. | ಆದ್ ಗೋತ್ರದವರು ಭೂಮಿಯಲ್ಲಿ ಅನ್ಯಾಯವಾಗಿ ಅಹಂಕಾರ ತೋರಿದರು. "ನಮಗಿಂತಲೂ ಹೆಚ್ಚು ಶಕ್ತಿಯಿರುವವರು ಯಾರು?" ಎಂದು ಅವರು ಕೇಳಿದರು. ಅವರನ್ನು ಸೃಷ್ಟಿಸಿದ ಅಲ್ಲಾಹು ಅವರಿಗಿಂತಲೂ ಹೆಚ್ಚು ಶಕ್ತಿಶಾಲಿಯೆಂದು ಅವರಿಗೆ ತಿಳಿದಿಲ್ಲವೇ? ಅವರು ನಮ್ಮ ವಚನಗಳನ್ನು ನಿಷೇಧಿಸುತ್ತಿದ್ದರು. | فَأَمَّا عَادٞ فَٱسۡتَكۡبَرُواْ فِي ٱلۡأَرۡضِ بِغَيۡرِ ٱلۡحَقِّ وَقَالُواْ مَنۡ أَشَدُّ مِنَّا قُوَّةًۖ أَوَلَمۡ يَرَوۡاْ أَنَّ ٱللَّهَ ٱلَّذِي خَلَقَهُمۡ هُوَ أَشَدُّ مِنۡهُمۡ قُوَّةٗۖ وَكَانُواْ بِـَٔايَٰتِنَا يَجۡحَدُونَ ١٥ |

16. ಕೊನೆಗೆ ಅಶುಭ ದಿನಗಳಲ್ಲಿ ನಾವು ಅವರ ಕಡೆಗೆ ಭೀಕರ ಚಳಿಗಾಳಿಯನ್ನು ಕಳುಹಿಸಿದೆವು. ಇಹಲೋಕದಲ್ಲಿ ಅವರು ಅವಮಾನಕರ ಶಿಕ್ಷೆಯ ರುಚಿ ನೋಡುವುದಕ್ಕಾಗಿ. ಆದರೆ ಪರಲೋಕದ ಶಿಕ್ಷೆಯು ಅತ್ಯಧಿಕ ಅವಮಾನಕರವಾಗಿದೆ. ಅವರಿಗೆ ಯಾವುದೇ ಸಹಾಯವು ಸಿಗುವುದಿಲ್ಲ.

فَأَرۡسَلۡنَا عَلَيۡهِمۡ رِيحٗا صَرۡصَرٗا فِيٓ أَيَّامٖ نَّحِسَاتٖ لِّنُذِيقَهُمۡ عَذَابَ ٱلۡخِزۡيِ فِي ٱلۡحَيَوٰةِ ٱلدُّنۡيَاۖ وَلَعَذَابُ ٱلۡأٓخِرَةِ أَخۡزَىٰۖ وَهُمۡ لَا يُنصَرُونَ ١٦

17. ಸಮೂದ್ ಗೋತ್ರಕ್ಕೂ ನಾವು ಸನ್ಮಾರ್ಗವನ್ನು ತೋರಿಸಿದೆವು. ಆದರೆ ಅವರು ಸನ್ಮಾರ್ಗಕ್ಕಿಂತ ಕುರುಡುತನವನ್ನೇ ಇಷ್ಟಪಟ್ಟರು. ಆದ್ದರಿಂದ ಅವರು ಮಾಡಿದ ದುಷ್ಕೃತ್ಯಗಳ ಕಾರಣದಿಂದ ಅವಮಾನಕರವಾದ ಭೀಕರ ಶಿಕ್ಷೆಯು ಅವರನ್ನು ಹಿಡಿಯಿತು.

وَأَمَّا ثَمُودُ فَهَدَيۡنَٰهُمۡ فَٱسۡتَحَبُّواْ ٱلۡعَمَىٰ عَلَى ٱلۡهُدَىٰ فَأَخَذَتۡهُمۡ صَٰعِقَةُ ٱلۡعَذَابِ ٱلۡهُونِ بِمَا كَانُواْ يَكۡسِبُونَ ١٧

18. ನಾವು ಸತ್ಯವಿಶ್ವಾಸಿಗಳನ್ನು ಮತ್ತು ದೇವಭಯವುಳ್ಳವರನ್ನು ರಕ್ಷಿಸಿದೆವು.

وَنَجَّيۡنَا ٱلَّذِينَ ءَامَنُواْ وَكَانُواْ يَتَّقُونَ ١٨

19. ಅಲ್ಲಾಹನ ಶತ್ರುಗಳನ್ನು ನರಕದ ಬಳಿಗೆ ಕರೆತರಲಾಗುವ ದಿನ. ಅವರೆಲ್ಲರನ್ನೂ ಒಟ್ಟುಗೂಡಿಸಲಾಗುವುದು.

وَيَوۡمَ يُحۡشَرُ أَعۡدَآءُ ٱللَّهِ إِلَى ٱلنَّارِ فَهُمۡ يُوزَعُونَ ١٩

20. ಎಲ್ಲಿಯವರೆಗೆಂದರೆ ಅವರು ನರಕದ ಬಳಿಗೆ ಬಂದಾಗ ಅವರ ಕಿವಿಗಳು, ಕಣ್ಣುಗಳು ಮತ್ತು ಚರ್ಮಗಳು ಅವರ ವಿರುದ್ಧವಾಗಿ ಸಾಕ್ಷಿ ನುಡಿಯುವುವು.

حَتَّىٰٓ إِذَا مَا جَآءُوهَا شَهِدَ عَلَيۡهِمۡ سَمۡعُهُمۡ وَأَبۡصَٰرُهُمۡ وَجُلُودُهُم بِمَا كَانُواْ يَعۡمَلُونَ ٢٠

21. ಅವರು ತಮ್ಮ ಚರ್ಮಗಳೊಂದಿಗೆ ಕೇಳುವರು: "ನೀವೇಕೆ ನಮ್ಮ ವಿರುದ್ಧ ಸಾಕ್ಷಿ ಹೇಳಿದಿರಿ?" ಅವು ಹೇಳುವುವು: "ಎಲ್ಲ ವಸ್ತುಗಳಿಗೂ ಮಾತನಾಡುವ ಶಕ್ತಿ ನೀಡಿದ ಅಲ್ಲಾಹು ನಮ್ಮನ್ನು ಮಾತನಾಡಿಸಿದನು." ಅವನೇ ನಿಮ್ಮನ್ನು ಮೊದಲ ಬಾರಿ ಸೃಷ್ಟಿಸಿದವನು. ನಿಮ್ಮನ್ನು ಅವನ ಬಳಿಗೇ ಮರಳಿಸಲಾಗುವುದು.

وَقَالُواْ لِجُلُودِهِمۡ لِمَ شَهِدتُّمۡ عَلَيۡنَاۖ قَالُوٓاْ أَنطَقَنَا ٱللَّهُ ٱلَّذِيٓ أَنطَقَ كُلَّ شَيۡءٖۚ وَهُوَ خَلَقَكُمۡ أَوَّلَ مَرَّةٖ وَإِلَيۡهِ تُرۡجَعُونَ ٢١

22. ನಿಮ್ಮ ಕಿವಿಗಳು, ನಿಮ್ಮ ಕಣ್ಣುಗಳು ಅಥವಾ ನಿಮ್ಮ ಚರ್ಮಗಳು ನಿಮ್ಮ ವಿರುದ್ಧ ಸಾಕ್ಷಿ ಹೇಳದಿರುವುದಕ್ಕಾಗಿ ನೀವು (ನಿಮ್ಮ ದುಷ್ಕರ್ಮಗಳನ್ನು) ಅವುಗಳಿಂದ ಅಡಗಿಸುತ್ತಿರಲಿಲ್ಲ. ಆದರೆ ನೀವು ಮಾಡುತ್ತಿರುವ ಕರ್ಮಗಳಲ್ಲಿ ಹೆಚ್ಚಿನವುಗಳನ್ನು ಅಲ್ಲಾಹು ತಿಳಿಯುವುದೇ ಇಲ್ಲ ಎಂದು ನೀವು ಭಾವಿಸಿದಿರಿ.

وَمَا كُنتُمۡ تَسۡتَتِرُونَ أَن يَشۡهَدَ عَلَيۡكُمۡ سَمۡعُكُمۡ وَلَآ أَبۡصَٰرُكُمۡ وَلَا جُلُودُكُمۡ وَلَٰكِن ظَنَنتُمۡ أَنَّ ٱللَّهَ لَا يَعۡلَمُ كَثِيرٗا مِّمَّا تَعۡمَلُونَ ٢٢

23. ನೀವು ನಿಮ್ಮ ಪರಿಪಾಲಕನ (ಅಲ್ಲಾಹನ) ಬಗ್ಗೆ ಇಟ್ಟುಕೊಂಡ ಆ ಭಾವನೆಯೇ ನಿಮ್ಮನ್ನು ಸರ್ವನಾಶ ಮಾಡಿತು. ಕೊನೆಗೆ ನೀವು ನಷ್ಟ ಹೊಂದಿದವರಲ್ಲಿ ಸೇರಿಬಿಟ್ಟಿರಿ.

وَذَٰلِكُمۡ ظَنُّكُمُ ٱلَّذِي ظَنَنتُم بِرَبِّكُمۡ أَرۡدَىٰكُمۡ فَأَصۡبَحۡتُم مِّنَ ٱلۡخَٰسِرِينَ ٢٣

24. ಈಗ ಅವರು ತಾಳ್ಮೆ ವಹಿಸಿದರೂ ಅವರ ವಾಸಸ್ಥಳವು ನರಕಾಗ್ನಿಯೇ ಆಗಿದೆ. ಅವರು ವಿನಾಯಿತಿಯನ್ನು ಬೇಡಿದರೂ

فَإِن يَصۡبِرُواْ فَٱلنَّارُ مَثۡوٗى لَّهُمۡۖ وَإِن يَسۡتَعۡتِبُواْ فَمَا هُم مِّنَ ٱلۡمُعۡتَبِينَ ٢٤

ಅವರಿಗೆ ವಿನಾಯಿತಿ ನೀಡಲಾಗುವುದಿಲ್ಲ.

25. ನಾವು ಅವರಿಗೆ ಕೆಲವು ಸಂಗಡಿಗರನ್ನು ನಿಶ್ಚಯಿಸಿದ್ದೆವು. ಆ ಸಂಗಡಿಗರು ಅವರಿಗೆ ಅವರ ಮುಂದಿರುವುದನ್ನು ಮತ್ತು ಹಿಂದಿರುವುದನ್ನು ಅಲಂಕಾರಗೊಳಿಸಿ ತೋರಿಸಿದರು. ಅವರಿಗಿಂತ ಮೊದಲು ಗತಿಸಿದ ಜಿನ್ನ್ ಮತ್ತು ಮನುಷ್ಯರ ಸಮುದಾಯಗಳ ಜೊತೆಗೆ ಇವರ ಮೇಲೂ (ಶಿಕ್ಷೆಯ) ವಚನವು ಖಾತ್ರಿಯಾಗಿ ಬಿಟ್ಟಿತು. ನಿಶ್ಚಯವಾಗಿಯೂ ಅವರು ನಷ್ಟ ಹೊಂದಿದವರಾಗಿದ್ದರು.

وَقَيَّضۡنَا لَهُمۡ قُرَنَآءَ فَزَيَّنُواْ لَهُم مَّا بَيۡنَ أَيۡدِيهِمۡ وَمَا خَلۡفَهُمۡ وَحَقَّ عَلَيۡهِمُ ٱلۡقَوۡلُ فِيٓ أُمَمٖ قَدۡ خَلَتۡ مِن قَبۡلِهِم مِّنَ ٱلۡجِنِّ وَٱلۡإِنسِۖ إِنَّهُمۡ كَانُواْ خَٰسِرِينَ ٢٥

26. ಸತ್ಯನಿಷೇಧಿಗಳು ಹೇಳಿದರು: "ನೀವು ಈ ಕುರ್‌ಆನಿಗೆ ಕಿವಿಗೊಡಬೇಡಿ. ಅದನ್ನು ಪಠಿಸುವುದನ್ನು ಕೇಳುವಾಗ ಗದ್ದಲ ಮಾಡಿರಿ. ನಿಮಗೆ ಅದನ್ನು ಸೋಲಿಸಲು ಸಾಧ್ಯವಾಗಬಹುದು."

وَقَالَ ٱلَّذِينَ كَفَرُواْ لَا تَسۡمَعُواْ لِهَٰذَا ٱلۡقُرۡءَانِ وَٱلۡغَوۡاْ فِيهِ لَعَلَّكُمۡ تَغۡلِبُونَ ٢٦

27. ನಿಶ್ಚಯವಾಗಿಯೂ ಆ ಸತ್ಯನಿಷೇಧಿಗಳಿಗೆ ನಾವು ಕಠೋರ ಶಿಕ್ಷೆಯ ರುಚಿಯನ್ನು ತೋರಿಸುವೆವು. ನಾವು ಅವರಿಗೆ ಅವರ ದುಷ್ಕರ್ಮಗಳ ಪ್ರತಿಫಲವನ್ನು ಖಂಡಿತ ನೀಡುವೆವು.

فَلَنُذِيقَنَّ ٱلَّذِينَ كَفَرُواْ عَذَابٗا شَدِيدٗا وَلَنَجۡزِيَنَّهُمۡ أَسۡوَأَ ٱلَّذِي كَانُواْ يَعۡمَلُونَ ٢٧

28. ಅದು ಅಲ್ಲಾಹನ ಶತ್ರುಗಳಿಗೆ ಶಿಕ್ಷೆಯಾಗಿರುವ ನರಕ. ಅವರಿಗೆ ಅಲ್ಲಿ ಶಾಶ್ವತ ವಾಸಕ್ಕಿರುವ ವಾಸ್ತವ್ಯವಿದೆ. ಅದು ಅವರು ನಮ್ಮ ದೃಷ್ಟಾಂತಗಳನ್ನು ನಿಷೇಧಿಸಿದ್ದಕ್ಕೆ ಪ್ರತಿಫಲವಾಗಿದೆ.

ذَٰلِكَ جَزَآءُ أَعۡدَآءِ ٱللَّهِ ٱلنَّارُۖ لَهُمۡ فِيهَا دَارُ ٱلۡخُلۡدِ جَزَآءَۢ بِمَا كَانُواْ بِـَٔايَٰتِنَا يَجۡحَدُونَ ٢٨

29. ಸತ್ಯನಿಷೇಧಿಗಳು ಹೇಳುವರು: "ನಮ್ಮ ಪರಿಪಾಲಕನೇ! ನಮ್ಮನ್ನು ದಾರಿತಪ್ಪಿಸಿದ ಜಿನ್ನ್ ಮತ್ತು ಮನುಷ್ಯರ (ಎರಡು ಪಂಗಡಗಳನ್ನು) ನಮಗೆ ತೋರಿಸಿಕೊಡು. ಅವರು (ನರಕದಲ್ಲಿ) ಅತ್ಯಂತ ಕೆಳಗಿನವರಾಗಲು (ಕಠೋರ ಶಿಕ್ಷೆ ಅನುಭವಿಸುವಂ-ತಾಗಲು) ನಾವು ಅವರನ್ನು ನಮ್ಮ ಪಾದಗಳ ಅಡಿಯಲ್ಲಿ ಹಾಕಿ ತುಳಿಯುವೆವು.

وَقَالَ ٱلَّذِينَ كَفَرُواْ رَبَّنَآ أَرِنَا ٱلَّذَيۡنِ أَضَلَّانَا مِنَ ٱلۡجِنِّ وَٱلۡإِنسِ نَجۡعَلۡهُمَا تَحۡتَ أَقۡدَامِنَا لِيَكُونَا مِنَ ٱلۡأَسۡفَلِينَ ٢٩

30. "ನಮ್ಮ ಪರಿಪಾಲಕನು ಅಲ್ಲಾಹು" ಎಂದು ಹೇಳಿ, ನಂತರ ಅದರಲ್ಲಿ ದೃಢವಾಗಿ ನಿಂತವರು ಯಾರೋ ಅವರ ಬಳಿಗೆ (ಅವರ ಮರಣದ ಸಮಯದಲ್ಲಿ) ದೇವದೂತರುಗಳು ಇಳಿದು ಬಂದು ಹೇಳುವರು: "ನೀವು ಭಯಪಡಬೇಡಿ ಮತ್ತು ದುಃಖಿಸಬೇಡಿ. ನಿಮಗೆ ವಾಗ್ದಾನ ಮಾಡಲಾದ ಸ್ವರ್ಗದ ಬಗ್ಗೆ ಸಂತೋಷಪಡಿರಿ.

إِنَّ ٱلَّذِينَ قَالُواْ رَبُّنَا ٱللَّهُ ثُمَّ ٱسۡتَقَٰمُواْ تَتَنَزَّلُ عَلَيۡهِمُ ٱلۡمَلَٰٓئِكَةُ أَلَّا تَخَافُواْ وَلَا تَحۡزَنُواْ وَأَبۡشِرُواْ بِٱلۡجَنَّةِ ٱلَّتِي كُنتُمۡ تُوعَدُونَ ٣٠

31. ಇಹಲೋಕದಲ್ಲಿ ನಾವು ನಿಮ್ಮ ಮಿತ್ರರಾಗಿದ್ದೆವು; ಪರಲೋಕದಲ್ಲೂ ಮಿತ್ರರಾಗಿರುವೆವು. ನಿಮಗೆ ಅಲ್ಲಿ ನಿಮ್ಮ ಮನಸ್ಸುಗಳು

نَحۡنُ أَوۡلِيَآؤُكُمۡ فِي ٱلۡحَيَوٰةِ ٱلدُّنۡيَا وَفِي ٱلۡأٓخِرَةِۖ وَلَكُمۡ فِيهَا مَا تَشۡتَهِيٓ أَنفُسُكُمۡ وَلَكُمۡ

ಬಯಸುವುದೆಲ್ಲವೂ ಇರುವುವು ಮತ್ತು ನೀವು ಬೇಡುವುದೆಲ್ಲವೂ ಇರುವುವು.

فِيهَا مَا تَدَّعُونَ ٣١

---

32. ಅದು ಕ್ಷಮಾಶೀಲನು ಮತ್ತು ದಯಾಳುವಾದ ಅಲ್ಲಾಹನ ಆತಿಥ್ಯವಾಗಿದೆ.

نُزُلًا مِّنْ غَفُورٍ رَّحِيمٍ ٣٢

---

33. ಅಲ್ಲಾಹನ ಕಡೆಗೆ ಕರೆಯುವ, ಸತ್ಕರ್ಮವೆಸಗುವ ಮತ್ತು ನಿಶ್ಚಯವಾಗಿಯೂ ನಾನು ಮುಸ್ಲಿಮರಲ್ಲಿ ಸೇರಿದವನೆಂದು ಹೇಳಿದವನಿಗಿಂತ ಉತ್ತಮ ಮಾತನ್ನು ಹೇಳಿದವನು ಯಾರು?

وَمَنْ أَحْسَنُ قَوْلًا مِّمَّن دَعَآ إِلَى ٱللَّهِ وَعَمِلَ
صَٰلِحًا وَقَالَ إِنَّنِى مِنَ ٱلْمُسْلِمِينَ ٣٣

---

34. ಒಳಿತು ಮತ್ತು ಕೆಡುಕು ಸಮಾನವಾಗುವುದಿಲ್ಲ. ಕೆಡುಕನ್ನು ಒಳಿತಿನ ಮೂಲಕ ತಡೆಯಿರಿ. ಆಗ ಯಾರೊಡನೆ ನಿಮಗೆ ಶತ್ರುತ್ವವಿದೆಯೋ ಅವನು ನಿಮ್ಮ ಆಪ್ತ ಮಿತ್ರನಂತೆ ಮಾರ್ಪಡುವನು.

وَلَا تَسْتَوِى ٱلْحَسَنَةُ وَلَا ٱلسَّيِّئَةُ ۚ ٱدْفَعْ بِٱلَّتِى
هِىَ أَحْسَنُ فَإِذَا ٱلَّذِى بَيْنَكَ وَبَيْنَهُۥ عَدَٰوَةٌ
كَأَنَّهُۥ وَلِىٌّ حَمِيمٌ ٣٤

---

35. ತಾಳ್ಮೆಯುಳ್ಳವರಿಗೆ ಮಾತ್ರ ಇದನ್ನು ನೀಡಲಾಗಿದೆ. ಮಹಾ ಭಾಗ್ಯವಂತರಿಗೆ ಮಾತ್ರ ಇದನ್ನು ನೀಡಲಾಗಿದೆ.

وَمَا يُلَقَّىٰهَآ إِلَّا ٱلَّذِينَ صَبَرُوا۟ وَمَا يُلَقَّىٰهَآ إِلَّا
ذُو حَظٍّ عَظِيمٍ ٣٥

---

36. ನಿಮಗೆ ಶೈತಾನನ ಕಡೆಯಿಂದ ಏನಾದರೂ ದುಷ್ಪ್ರೇರಣೆ ಉಂಟಾದರೆ ಅಲ್ಲಾಹನೊಡನೆ ಅಭಯ ಯಾಚಿಸಿರಿ. ನಿಶ್ಚಯವಾಗಿಯೂ ಅವನು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

وَإِمَّا يَنزَغَنَّكَ مِنَ ٱلشَّيْطَٰنِ نَزْغٌ فَٱسْتَعِذْ
بِٱللَّهِ ۖ إِنَّهُۥ هُوَ ٱلسَّمِيعُ ٱلْعَلِيمُ ٣٦

---

37. ರಾತ್ರಿ, ಹಗಲು, ಸೂರ್ಯ ಮತ್ತು ಚಂದ್ರ ಅಲ್ಲಾಹನ ದೃಷ್ಟಾಂತಗಳಲ್ಲಿ ಸೇರಿದ್ದಾಗಿವೆ. ಸೂರ್ಯನಿಗೋ, ಚಂದ್ರನಿಗೋ ಸಾಷ್ಟಾಂಗ ಮಾಡಬೇಡಿ. ಬದಲಿಗೆ, ಅವುಗಳನ್ನು ಸೃಷ್ಟಿಸಿದ ಅಲ್ಲಾಹನಿಗೆ ಸಾಷ್ಟಾಂಗ ಮಾಡಿರಿ. ನೀವು ಅವನನ್ನು ಆರಾಧಿಸುವವರಾಗಿದ್ದರೆ.

وَمِنْ ءَايَٰتِهِ ٱلَّيْلُ وَٱلنَّهَارُ وَٱلشَّمْسُ وَٱلْقَمَرُ ۚ لَا
تَسْجُدُوا۟ لِلشَّمْسِ وَلَا لِلْقَمَرِ وَٱسْجُدُوا۟ لِلَّهِ
ٱلَّذِى خَلَقَهُنَّ إِن كُنتُمْ إِيَّاهُ تَعْبُدُونَ ٣٧

---

38. ಅದರ ಬಳಿಕವೂ ಅವರು ಅಹಂಕಾರ ತೋರುವುದಾದರೆ ನಿಮ್ಮ ಪರಿಪಾಲಕನ (ಅಲ್ಲಾಹನ) ಬಳಿಯಿರುವವರು (ದೇವದೂತರುಗಳು) ರಾತ್ರಿ ಮತ್ತು ಹಗಲು ಅವನ ಪರಿಶುದ್ಧಿಯನ್ನು ಕೊಂಡಾಡುತ್ತಾರೆ. ಅವರು (ಎಂದಿಗೂ) ದಣಿಯುವುದಿಲ್ಲ.

فَإِنِ ٱسْتَكْبَرُوا۟ فَٱلَّذِينَ عِندَ رَبِّكَ يُسَبِّحُونَ
لَهُۥ بِٱلَّيْلِ وَٱلنَّهَارِ وَهُمْ لَا يَسْـَٔمُونَ ٣٨

---

39. ನೀವು ಭೂಮಿಯನ್ನು ಒಣಗಿ ಬರಡಾಗಿ ಕಾಣುವುದು ಅವರ ದೃಷ್ಟಾಂತಗಳಲ್ಲಿ ಒಂದಾಗಿದೆ. ನಂತರ ನಾವು ಅದರ ಮೇಲೆ ನೀರನ್ನು ಸುರಿಸಿದರೆ ಅದಕ್ಕೆ ಕಂಪನವುಂಟಾಗಿ ಬೆಳೆಯತೊಡಗುತ್ತದೆ. ಅದಕ್ಕೆ ಜೀವ ನೀಡಿದವನು ಖಂಡಿತವಾಗಿಯೂ

وَمِنْ ءَايَٰتِهِۦٓ أَنَّكَ تَرَى ٱلْأَرْضَ خَٰشِعَةً
فَإِذَآ أَنزَلْنَا عَلَيْهَا ٱلْمَآءَ ٱهْتَزَّتْ
وَرَبَتْ ۚ إِنَّ ٱلَّذِىٓ أَحْيَاهَا لَمُحْىِ ٱلْمَوْتَىٰٓ ۚ

ಮರಣಹೊಂದಿದವರಿಗೆ ಜೀವ ನೀಡುತ್ತಾನೆ. ನಿಶ್ಚಯವಾಗಿಯೂ ಅವನು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

إِنَّهُۥ عَلَىٰ كُلِّ شَيۡءٖ قَدِيرٌ ﴿٣٩﴾

---

40. ನಿಶ್ಚಯವಾಗಿಯೂ ನಮ್ಮ ದೃಷ್ಟಾಂತಗಳಲ್ಲಿ ವಿಚಲತೆಯನ್ನು ಉಂಟುಮಾಡುವವರು[1] ಯಾರೋ ಅವರು ನಮ್ಮಿಂದ (ಸ್ವಲ್ಪವೂ) ಮರೆಯಾಗಿಲ್ಲ. ಹಾಗಾದರೆ ನರಕಕ್ಕೆ ಹಾಕಲಾಗುವವನು ಶ್ರೇಷ್ಠನೋ? ಅಥವಾ ಪುನರುತ್ಥಾನ ದಿನದಂದು ನಿರ್ಭಯವಾಗಿ ಬರುವವನೋ? ನೀವು ಬಯಸುವುದನ್ನು ಮಾಡಿರಿ. ನಿಶ್ಚಯವಾಗಿಯೂ ನೀವು ಮಾಡುವುದನ್ನು ಅವನು ವೀಕ್ಷಿಸುತ್ತಿದ್ದಾನೆ.

إِنَّ ٱلَّذِينَ يُلۡحِدُونَ فِيٓ ءَايَٰتِنَا لَا يَخۡفَوۡنَ عَلَيۡنَآۗ أَفَمَن يُلۡقَىٰ فِي ٱلنَّارِ خَيۡرٌ أَم مَّن يَأۡتِيٓ ءَامِنٗا يَوۡمَ ٱلۡقِيَٰمَةِۚ ٱعۡمَلُواْ مَا شِئۡتُمۡ إِنَّهُۥ بِمَا تَعۡمَلُونَ بَصِيرٌ ﴿٤٠﴾

---

41. ನಿಶ್ಚಯವಾಗಿಯೂ ಈ ಉಪದೇಶವು ಅವರ ಬಳಿಗೆ ಬಂದಾಗ ಅದನ್ನು ನಿಷೇಧಿಸಿದವರು (ನಷ್ಟ ಹೊಂದಿದರು). ನಿಶ್ಚಯವಾಗಿಯೂ ಇದೊಂದು ಪ್ರಬಲ ಗ್ರಂಥವಾಗಿದೆ.

إِنَّ ٱلَّذِينَ كَفَرُواْ بِٱلذِّكۡرِ لَمَّا جَآءَهُمۡۖ وَإِنَّهُۥ لَكِتَٰبٌ عَزِيزٞ ﴿٤١﴾

---

42. ಅದರ ಮುಂದಿನಿಂದ ಅಥವಾ ಹಿಂದಿನಿಂದ ಮಿಥ್ಯವು ಅದರಲ್ಲಿ ಸೇರಿಕೊಳ್ಳುವುದಿಲ್ಲ. ಅದು ವಿವೇಕಪೂರ್ಣನು ಮತ್ತು ಸ್ತುತ್ಯರ್ಹನಾದ ಅಲ್ಲಾಹನಿಂದ ಅವತೀರ್ಣವಾಗಿದೆ.

لَّا يَأۡتِيهِ ٱلۡبَٰطِلُ مِنۢ بَيۡنِ يَدَيۡهِ وَلَا مِنۡ خَلۡفِهِۦۖ تَنزِيلٞ مِّنۡ حَكِيمٍ حَمِيدٖ ﴿٤٢﴾

---

43. ನಿಮಗಿಂತ ಮೊದಲಿನ ಸಂದೇಶವಾಹಕರುಗಳೊಡನೆ ಹೇಳಲಾಗಿರುವುದನ್ನೇ ನಿಮ್ಮೊಡನೆಯೂ ಹೇಳಲಾಗಿದೆ. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಕ್ಷಮಿಸುವವನು ಮತ್ತು ಯಾತನಾಮಯ ಶಿಕ್ಷೆ ನೀಡುವವನಾಗಿದ್ದಾನೆ.

مَّا يُقَالُ لَكَ إِلَّا مَا قَدۡ قِيلَ لِلرُّسُلِ مِن قَبۡلِكَۚ إِنَّ رَبَّكَ لَذُو مَغۡفِرَةٖ وَذُو عِقَابٍ أَلِيمٖ ﴿٤٣﴾

---

44. ನಾವು ಇದನ್ನು ಅರಬ್ಬೇತರ ಭಾಷೆಯ ಕುರ್‌ಆನ್ ಆಗಿ ಮಾಡಿರುತ್ತಿದ್ದರೆ ಅವರು ಕೇಳುತ್ತಿದ್ದರು: "ಇದರ ವಚನಗಳನ್ನೇಕೆ ವಿವರಿಸಲಾಗಿಲ್ಲ? ಅರಬೇತರ (ಗ್ರಂಥ) ಮತ್ತು ಅರಬಿ(ಪ್ರವಾದಿ) ಯೇ?" ಹೇಳಿರಿ: "ಇದು (ಕುರ್‌ಆನ್) ಸತ್ಯವಿಶ್ವಾಸಿಗಳಿಗೆ ಸನ್ಮಾರ್ಗ ಮತ್ತು ಉಪಶಮನವಾಗಿದೆ. ಅದರಲ್ಲಿ ವಿಶ್ವಾಸವಿಡದವರು ಯಾರೋ ಅವರ ಕಿವಿಗಳಲ್ಲಿ ಕಿವುಡುತನವಿದೆ. ಅದು (ಕುರ್‌ಆನ್) ಅವರಿಗೆ ಕುರುಡುತನವಾಗಿದೆ. ಈ ಜನರು ವಿದೂರ ಸ್ಥಳದಿಂದ ಕೂಗಿ ಕರೆಯಲಾಗುವವರಾಗಿದ್ದಾರೆ."[2]

وَلَوۡ جَعَلۡنَٰهُ قُرۡءَانًا أَعۡجَمِيّٗا لَّقَالُواْ لَوۡلَا فُصِّلَتۡ ءَايَٰتُهُۥٓۖ ءَا۬عۡجَمِيّٞ وَعَرَبِيّٞۗ قُلۡ هُوَ لِلَّذِينَ ءَامَنُواْ هُدٗى وَشِفَآءٞۚ وَٱلَّذِينَ لَا يُؤۡمِنُونَ فِيٓ ءَاذَانِهِمۡ وَقۡرٞ وَهُوَ عَلَيۡهِمۡ عَمًىۚ أُوْلَٰٓئِكَ يُنَادَوۡنَ مِن مَّكَانِۭ بَعِيدٖ ﴿٤٤﴾

---

[1] ಅಂದರೆ ಕುರ್‌ಆನ್ ದೇವವಾಣಿಯೆಂದು ಒಪ್ಪಿಕೊಂಡ ಬಳಿಕವೂ ಅದರಿಂದ ವಿಮುಖರಾಗುವವರು ಮತ್ತು ಅದನ್ನು ನಿಷೇಧಿಸುವವರು. ತಮ್ಮ ವಿಚಾರಗಳನ್ನು ಮತ್ತು ತತ್ವ-ಸಿದ್ಧಾಂತಗಳನ್ನು ಸಮರ್ಥಿಸುವುದಕ್ಕಾಗಿ ಕುರ್‌ಆನ್ ವಚನಗಳನ್ನು ತಪ್ಪಾಗಿ ವ್ಯಾಖ್ಯಾನಿಸುವವರು ಕೂಡ ಇದರಲ್ಲಿ ಒಳಪಡುತ್ತಾರೆ.

[2] ಅಂದರೆ ದೂರದಲ್ಲಿರುವ ಜನರಿಗೆ ಕರೆಯುವವನನ್ನು ನೋಡಲು ಮತ್ತು ಅವನ ಕರೆಯನ್ನು ಕೇಳಲು ಸಾಧ್ಯವಾಗುವುದಿಲ್ಲ. ಹಾಗೆಯೇ ಇವರಿಗೂ ಕುರ್‌ಆನನ್ನು ಕೇಳಲು ಮತ್ತು ಅರ್ಥಮಾಡಿಕೊಳ್ಳಲು ಸಾಧ್ಯವಾಗುವುದಿಲ್ಲ.

45. ನಾವು ಮೂಸಾರಿಗೆ ಗ್ರಂಥವನ್ನು ನೀಡಿದೆವು. ಆದರೆ ಅವರು ಅದರಲ್ಲಿ ಭಿನ್ನಮತ ತಳೆದರು. ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಒಂದು ವಚನವು ಮೊದಲೇ ಇಲ್ಲದಿರು-ತ್ತಿದ್ದರೆ ಅವರ ನಡುವೆ ಈಗಾಗಲೇ ತೀರ್ಪು ನೀಡಲಾಗುತ್ತಿತ್ತು. ನಿಶ್ಚಯವಾಗಿಯೂ ಅವರು ಅದರ ಬಗ್ಗೆ ಗೊಂದಲಪೂರ್ಣ ಸಂಶಯದಲ್ಲಿದ್ದಾರೆ.

وَلَقَدْ ءَاتَيْنَا مُوسَى ٱلْكِتَٰبَ فَٱخْتُلِفَ فِيهِ ۗ وَلَوْلَا كَلِمَةٌ سَبَقَتْ مِن رَّبِّكَ لَقُضِىَ بَيْنَهُمْ ۚ وَإِنَّهُمْ لَفِى شَكٍّ مِّنْهُ مُرِيبٍ ﴿٤٥﴾

46. ಯಾರು ಸತ್ಕರ್ಮವೆಸಗುತ್ತಾನೋ ಅದು ಅವನ ಒಳಿತಿಗೇ ಆಗಿದೆ. ಯಾರು ದುಷ್ಕರ್ಮವೆಸಗುತ್ತಾನೋ ಅದರ ದೋಷವು ಅವನಿಗೇ ಆಗಿದೆ. ನಿಮ್ಮ ಪರಿಪಾಲಕ (ಅಲ್ಲಾಹು) ತನ್ನ ದಾಸರಿಗೆ ಅನ್ಯಾಯ-ವೆಸಗುವವನೇ ಅಲ್ಲ.

مَّنْ عَمِلَ صَٰلِحًا فَلِنَفْسِهِۦ ۖ وَمَنْ أَسَآءَ فَعَلَيْهَا ۗ وَمَا رَبُّكَ بِظَلَّٰمٍ لِّلْعَبِيدِ ﴿٤٦﴾

47. ಅಂತ್ಯಸಮಯದ ಕುರಿತಾದ ಜ್ಞಾನವನ್ನು ಅಲ್ಲಾಹನಿಗೆ ಮರಳಿಸ-ಲಾಗುತ್ತದೆ. ಅವನ ತಿಳುವಳಿಕೆಯಿಲ್ಲದೆ ಯಾವುದೇ ಹಣ್ಣು ಅದರ ತೊಗಲಿನಿಂದ ಹೊರಹೊಮ್ಮುವುದಿಲ್ಲ. (ಅವನ ತಿಳುವಳಿಕೆಯಿ-ಲ್ಲದೆ) ಯಾವುದೇ ಸ್ತ್ರೀ ಗರ್ಭ ಧರಿಸುವುದೋ ಹಡೆಯುವುದೋ ಇಲ್ಲ. “ನನ್ನ ಸಹಭಾಗಿಗಳು ಎಲ್ಲಿ?” ಎಂದು ಅವನು ಅವರನ್ನು ಕರೆದು ಕೇಳುವ ದಿನ! ಅವರು ಉತ್ತರಿಸುವರು: “ನಮ್ಮಲ್ಲಿ ಯಾರೂ ಅದಕ್ಕೆ ಸಾಕ್ಷಿಗಳಲ್ಲ ಎಂದು ನಾವು ನಿನಗೆ ತಿಳಿಸುತ್ತಿದ್ದೇವೆ.”

إِلَيْهِ يُرَدُّ عِلْمُ ٱلسَّاعَةِ ۚ وَمَا تَخْرُجُ مِن ثَمَرَٰتٍ مِّنْ أَكْمَامِهَا وَمَا تَحْمِلُ مِنْ أُنثَىٰ وَلَا تَضَعُ إِلَّا بِعِلْمِهِۦ ۚ وَيَوْمَ يُنَادِيهِمْ أَيْنَ شُرَكَآءِى قَالُوٓا۟ ءَاذَنَّٰكَ مَا مِنَّا مِن شَهِيدٍ ﴿٤٧﴾

48. ಇದಕ್ಕೆ ಮೊದಲು ಅವರು ಕರೆದು ಪ್ರಾರ್ಥಿಸುತ್ತಿದ್ದವರೆಲ್ಲರೂ (ದೇವರುಗಳೆಲ್ಲರೂ) ಅವರನ್ನು ಬಿಟ್ಟು ಹೋಗುವರು. ಈಗ ಅವರನ್ನು ಪಾರು ಮಾಡುವವರು ಯಾರೂ ಇಲ್ಲವೆಂದು ಅವರಿಗೆ ಮನವರಿಕೆಯಾಗುವುದು.

وَضَلَّ عَنْهُم مَّا كَانُوا۟ يَدْعُونَ مِن قَبْلُ ۖ وَظَنُّوا۟ مَا لَهُم مِّن مَّحِيصٍ ﴿٤٨﴾

49. ಒಳಿತನ್ನು ಬೇಡಲು ಮನುಷ್ಯನಿಗೆ ಆಯಾಸವಾಗುವುದಿಲ್ಲ. ಆದರೆ ಅವನಿಗೆ ತೊಂದರೆಯುಂಟಾದರೆ ಅವನು ಹತಾಶ ಮತ್ತು ನಿರಾಶನಾಗುತ್ತಾನೆ.

لَّا يَسْـَٔمُ ٱلْإِنسَٰنُ مِن دُعَآءِ ٱلْخَيْرِ وَإِن مَّسَّهُ ٱلشَّرُّ فَيَـُٔوسٌ قَنُوطٌ ﴿٤٩﴾

50. ಮನುಷ್ಯನಿಗೆ ವಿಪತ್ತು ಬಾಧಿಸಿದ ಬಳಿಕ ನಾವು ಅವನಿಗೆ ನಮ್ಮ ಕಡೆಯ ದಯೆಯ ರುಚಿಯನ್ನು ತೋರಿಸಿದರೆ, ನಿಶ್ಚಯವಾಗಿಯೂ ಅವನು ಹೇಳುವನು: “ಇದಕ್ಕೆ ನಾನು ಹಕ್ಕುಳ್ಳವನಾಗಿದ್ದೇನೆ. ಅಂತ್ಯಸಮಯವು ಸಂಭವಿಸುವುದೆಂದು ನಾನು ಭಾವಿಸುವುದಿಲ್ಲ. ಇನ್ನು ನನ್ನನ್ನು ನನ್ನ ಪರಿಪಾಲಕನ (ಅಲ್ಲಾಹನ) ಕಡೆಗೆ ಮರಳಿಸಲಾದರೂ ಸಹ ಅವನ ಬಳಿ ನನಗೆ ಒಳಿತು ಮಾತ್ರವೇ ಇರುತ್ತದೆ.” ಆ ಸತ್ಯನಿಷೇಧಿಗಳಿಗೆ ಅವರು ಮಾಡಿದ ಕರ್ಮಗಳ

وَلَئِنْ أَذَقْنَٰهُ رَحْمَةً مِّنَّا مِنۢ بَعْدِ ضَرَّآءَ مَسَّتْهُ لَيَقُولَنَّ هَٰذَا لِى وَمَآ أَظُنُّ ٱلسَّاعَةَ قَآئِمَةً وَلَئِن رُّجِعْتُ إِلَىٰ رَبِّىٓ إِنَّ لِى عِندَهُۥ لَلْحُسْنَىٰ ۚ فَلَنُنَبِّئَنَّ ٱلَّذِينَ كَفَرُوا۟ بِمَا عَمِلُوا۟ وَلَنُذِيقَنَّهُم مِّنْ عَذَابٍ غَلِيظٍ ﴿٥٠﴾

ಬಗ್ಗೆ ನಾವು ಖಂಡಿತ ತಿಳಿಸಿಕೊಡುವೆವು ಮತ್ತು ಅವರಿಗೆ ಕಠೋರ ಶಿಕ್ಷೆಯ ರುಚಿಯನ್ನು ಖಂಡಿತ ತೋರಿಸುವೆವು.

51. ನಾವು ಮನುಷ್ಯನಿಗೆ ಅನುಗ್ರಹವನ್ನು ದಯಪಾಲಿಸಿದರೆ ಅವನು ಮುಖ ತಿರುಗಿಸಿ ನಡೆಯುತ್ತಾನೆ ಮತ್ತು ತನ್ನಷ್ಟಕ್ಕೆ ದೂರ ಸರಿಯುತ್ತಾನೆ. ಆದರೆ ಅವನಿಗೆ ಆಪತ್ತು ಸಂಭವಿಸಿದರೆ ಅವನು ದೀರ್ಘ ಪ್ರಾರ್ಥನೆಗಳಲ್ಲಿ ತೊಡಗುತ್ತಾನೆ.

وَإِذَآ أَنۡعَمۡنَا عَلَى ٱلۡإِنسَٰنِ أَعۡرَضَ وَنَـَٔا بِجَانِبِهِۦ وَإِذَا مَسَّهُ ٱلشَّرُّ فَذُو دُعَآءٍ عَرِيضٖ ٥١

52. ಹೇಳಿರಿ: “ನೀವು ಆಲೋಚಿಸಿ ನೋಡಿದ್ದೀರಾ? ಇದು (ಕುರ್‌ಆನ್) ಅಲ್ಲಾಹನ ಕಡೆಯಿಂದಾಗಿದ್ದು, ನಂತರ ನೀವು ಅದನ್ನು ನಿಷೇಧಿಸುವುದಾದರೆ, (ಸತ್ಯದಿಂದ) ವಿದೂರವಾದ ಕಡು ವಿರೋ-ಧದಲ್ಲಿರುವವನಿಗಿಂತಲೂ ಹೆಚ್ಚು ದಾರಿತಪ್ಪಿದವನು ಯಾರು?”

قُلۡ أَرَءَيۡتُمۡ إِن كَانَ مِنۡ عِندِ ٱللَّهِ ثُمَّ كَفَرۡتُم بِهِۦ مَنۡ أَضَلُّ مِمَّنۡ هُوَ فِي شِقَاقِۭ بَعِيدٖ ٥٢

53. ನಾವು ಸದ್ಯವೇ ಅವರಿಗೆ ದಿಗಂತಗಳಲ್ಲಿ ಮತ್ತು ಸ್ವತಃ ಅವರಲ್ಲೇ ನಮ್ಮ ದೃಷ್ಟಾಂತಗಳನ್ನು ತೋರಿಸಿಕೊಡುವೆವು. ಇದು (ಕುರ್‌ಆನ್) ಸತ್ಯವೆಂದು ಅವರಿಗೆ ಸ್ಪಷ್ಟವಾಗುವ ತನಕ. ನಿಮ್ಮ ಪರಿಪಾಲಕನು (ಅಲ್ಲಾಹು) ಎಲ್ಲಾ ವಿಷಯಗಳಿಗೂ ಸಾಕ್ಷಿಯಾಗಿರುವುದು ನಿಮಗೆ ಸಾಕಾಗುವುದಿಲ್ಲವೇ?

سَنُرِيهِمۡ ءَايَٰتِنَا فِي ٱلۡأٓفَاقِ وَفِيٓ أَنفُسِهِمۡ حَتَّىٰ يَتَبَيَّنَ لَهُمۡ أَنَّهُ ٱلۡحَقُّۗ أَوَلَمۡ يَكۡفِ بِرَبِّكَ أَنَّهُۥ عَلَىٰ كُلِّ شَيۡءٖ شَهِيدٌ ٥٣

54. ತಿಳಿಯಿರಿ! ನಿಶ್ಚಯವಾಗಿಯೂ ಅವರು ಅವರ ಪರಿಪಾಲಕನನ್ನು (ಅಲ್ಲಾಹನನ್ನು) ಭೇಟಿಯಾಗುವ ವಿಷಯದಲ್ಲಿ ಸಂದೇಹದಲ್ಲಿ-ದ್ದಾರೆ. ತಿಳಿಯಿರಿ! ನಿಶ್ಚಯವಾಗಿಯೂ ಅವನು ಎಲ್ಲಾ ವಸ್ತುಗಳನ್ನು ಆವರಿಸಿಕೊಂಡಿದ್ದಾನೆ.

أَلَآ إِنَّهُمۡ فِي مِرۡيَةٖ مِّن لِّقَآءِ رَبِّهِمۡۗ أَلَآ إِنَّهُۥ بِكُلِّ شَيۡءٖ مُّحِيطُۢ ٥٤

# 42. ಅಶ್ಶೂರಾ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಹಾ-ಮೀಮ್.

حمٓ ١

2. ಐನ್-ಸೀನ್-ಕ್ವಾಫ್.

عٓسٓقٓ ٢

3. ಪ್ರಬಲನು ಮತ್ತು ವಿವೇಕಪೂರ್ಣನಾದ ಅಲ್ಲಾಹು ನಿಮಗೆ ಮತ್ತು ನಿಮಗಿಂತ ಮೊದಲಿನವರಿಗೆ ಈ ರೀತಿ ದೇವವಾಣಿಯನ್ನು ನೀಡುತ್ತಾನೆ.

كَذَٰلِكَ يُوحِيٓ إِلَيۡكَ وَإِلَى ٱلَّذِينَ مِن قَبۡلِكَ ٱللَّهُ ٱلۡعَزِيزُ ٱلۡحَكِيمُ ٣

4. ಭೂಮ್ಯಾಕಾಶಗಳಲ್ಲಿರುವುದೆಲ್ಲವೂ ಅವನಿಗೆ ಸೇರಿದ್ದು. ಅವನು ಅತ್ಯುನ್ನತನು ಮತ್ತು ಮಹಾಮಹಿಮನಾಗಿದ್ದಾನೆ.

لَهُۥ مَا فِي ٱلسَّمَٰوَٰتِ وَمَا فِي ٱلۡأَرۡضِۖ وَهُوَ ٱلۡعَلِيُّ ٱلۡعَظِيمُ ٤

5. ಆಕಾಶಗಳು ಅವುಗಳ ಮೇಲ್ಭಾಗದಿಂದ ಇನ್ನೇನು ಒಡೆದು ಚೂರಾಗುವಂತಿದೆ. ದೇವದೂತರುಗಳು ಅವರ ಪರಿಪಾಲಕನನ್ನು (ಅಲ್ಲಾಹನನ್ನು) ಸ್ತುತಿಸುತ್ತಾ ಅವನ ಪರಿಶುದ್ಧಿಯನ್ನು ಕೊಂಡಾಡುತ್ತಾರೆ ಮತ್ತು ಭೂಮಿಯಲ್ಲಿರುವವರಿಗಾಗಿ ಕ್ಷಮೆ-ಯಾಚಿಸುತ್ತಾರೆ. ತಿಳಿಯಿರಿ! ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

تَكَادُ ٱلسَّمَٰوَٰتُ يَتَفَطَّرۡنَ مِن فَوۡقِهِنَّۚ وَٱلۡمَلَٰٓئِكَةُ يُسَبِّحُونَ بِحَمۡدِ رَبِّهِمۡ وَيَسۡتَغۡفِرُونَ لِمَن فِي ٱلۡأَرۡضِۗ أَلَآ إِنَّ ٱللَّهَ هُوَ ٱلۡغَفُورُ ٱلرَّحِيمُ ٥

6. ತನ್ನನ್ನು ಬಿಟ್ಟು ಬೇರೆಯವರನ್ನು ರಕ್ಷಕರನ್ನಾಗಿ ಸ್ವೀಕರಿಸಿದವ-ರನ್ನು ಅಲ್ಲಾಹು ಗಮನಿಸುತ್ತಿದ್ದಾನೆ.[1] ಅವರ ವಿಷಯದಲ್ಲಿ ನಿಮಗೆ ಯಾವುದೇ ಹೊಣೆಗಾರಿಕೆಯಿಲ್ಲ.

وَٱلَّذِينَ ٱتَّخَذُواْ مِن دُونِهِۦٓ أَوۡلِيَآءَ ٱللَّهُ حَفِيظٌ عَلَيۡهِمۡ وَمَآ أَنتَ عَلَيۡهِم بِوَكِيلٖ ٦

7. ಈ ರೀತಿ ನಾವು ನಿಮಗೆ ಅರಬ್ಬಿ ಭಾಷೆಯಲ್ಲಿರುವ ಕುರ್‌ಆನನ್ನು ದೇವವಾಣಿಯಾಗಿ ನೀಡಿದೆವು. ಉಮ್ಮುಲ್ ಕುರಾ (ಮಕ್ಕಾ) ಮತ್ತು ಅದರ ಆಸುಪಾಸಿನಲ್ಲಿರುವವರಿಗೆ ನೀವು ಮುನ್ನೆಚ್ಚರಿಕೆ ನೀಡುವುದಕ್ಕಾಗಿ. ಒಟ್ಟುಗೂಡಿಸುವ ದಿನದ ಬಗ್ಗೆಯೂ ನೀವು ಎಚ್ಚರಿಕೆ ನೀಡುವುದಕ್ಕಾಗಿ. ಆ ದಿನ ಬರುವುದರಲ್ಲಿ ಸಂದೇಹವೇ ಇಲ್ಲ. ಅಂದು ಒಂದು ಗುಂಪು ಸ್ವರ್ಗದಲ್ಲಿ ಮತ್ತು ಇನ್ನೊಂದು ಗುಂಪು ಜ್ವಲಿಸುವ ನರಕದಲ್ಲಿರುವುದು.

وَكَذَٰلِكَ أَوۡحَيۡنَآ إِلَيۡكَ قُرۡءَانًا عَرَبِيّٗا لِّتُنذِرَ أُمَّ ٱلۡقُرَىٰ وَمَنۡ حَوۡلَهَا وَتُنذِرَ يَوۡمَ ٱلۡجَمۡعِ لَا رَيۡبَ فِيهِۚ فَرِيقٞ فِي ٱلۡجَنَّةِ وَفَرِيقٞ فِي ٱلسَّعِيرِ ٧

8. ಅಲ್ಲಾಹು ಇಚ್ಛಿಸುತ್ತಿದ್ದರೆ ಅವರನ್ನು (ಮನುಷ್ಯರನ್ನು) ಏಕೈಕ ಸಮುದಾಯವಾಗಿ ಮಾಡುತ್ತಿದ್ದನು. ಆದರೆ ಅವನು ಇಚ್ಛಿಸುವ-ವರನ್ನು ತನ್ನ ದಯೆಯಲ್ಲಿ ಪ್ರವೇಶ ಮಾಡಿಸುತ್ತಾನೆ. ಅಕ್ರಮಿಗಳಿಗೆ ಯಾವುದೇ ರಕ್ಷಕರು ಅಥವಾ ಸಹಾಯಕರು ಇರುವುದಿಲ್ಲ.

وَلَوۡ شَآءَ ٱللَّهُ لَجَعَلَهُمۡ أُمَّةٗ وَٰحِدَةٗ وَلَٰكِن يُدۡخِلُ مَن يَشَآءُ فِي رَحۡمَتِهِۦۚ وَٱلظَّٰلِمُونَ مَا لَهُم مِّن وَلِيّٖ وَلَا نَصِيرٍ ٨

9. ಅವರು ಅವನನ್ನು ಬಿಟ್ಟು ಬೇರೆಯವರನ್ನು ರಕ್ಷಕರನ್ನಾಗಿ ಸ್ವೀ-ಕರಿಸಿದ್ದಾರೆಯೇ? ಆದರೆ ಅಲ್ಲಾಹು ಮಾತ್ರ ರಕ್ಷಕನು. ಅವನು ಮೃತರಿಗೆ ಜೀವ ನೀಡುತ್ತಾನೆ. ಅವನು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

أَمِ ٱتَّخَذُواْ مِن دُونِهِۦٓ أَوۡلِيَآءَۖ فَٱللَّهُ هُوَ ٱلۡوَلِيُّ وَهُوَ يُحۡيِ ٱلۡمَوۡتَىٰ وَهُوَ عَلَىٰ كُلِّ شَيۡءٖ قَدِيرٞ ٩

10. ನೀವು ಯಾವುದೇ ವಿಷಯದಲ್ಲಿ ಭಿನ್ನಮತ ತಳೆದಿದ್ದರೂ ಆ ವಿಷಯದಲ್ಲಿ ತೀರ್ಪು ನೀಡುವ ಅಧಿಕಾರವಿರುವುದು ಅಲ್ಲಾಹನಿಗೆ ಮಾತ್ರ. (ಹೇಳಿರಿ): “ಅವನೇ ನನ್ನ ಪರಿಪಾಲಕನಾದ ಅಲ್ಲಾಹು. ನಾನು ಅವನಲ್ಲಿಯೇ ಭರವಸೆಯಿಟ್ಟಿದ್ದೇನೆ ಮತ್ತು ಅವನ ಬಳಿಗೆ ವಿನಮ್ರತೆಯಿಂದ ಮರಳುತ್ತೇನೆ.”

وَمَا ٱخۡتَلَفۡتُمۡ فِيهِ مِن شَيۡءٖ فَحُكۡمُهُۥٓ إِلَى ٱللَّهِۚ ذَٰلِكُمُ ٱللَّهُ رَبِّي عَلَيۡهِ تَوَكَّلۡتُ وَإِلَيۡهِ أُنِيبُ ١٠

11. ಅವನು ಭೂಮ್ಯಾಕಾಶಗಳ ಸೃಷ್ಟಿಕರ್ತನು. ಅವನು

فَاطِرُ ٱلسَّمَٰوَٰتِ وَٱلۡأَرۡضِۚ جَعَلَ لَكُم مِّنۡ

[1] ಅಂದರೆ ಅಲ್ಲಾಹು ಅವರ ಎಲ್ಲಾ ಕರ್ಮಗಳನ್ನು ಅದರ ಆಧಾರದಲ್ಲಿ ಅವರಿಗೆ ಪ್ರತಿಫಲವನ್ನು ನೀಡಲು ಸುರಕ್ಷಿತವಾಗಿ ಸಂರಕ್ಷಿಸಿಡುತ್ತಾನೆ.

| | |
|---|---|
| ನಿಮ್ಮಿಂದಲೇ ನಿಮಗೆ ಜೋಡಿಗಳನ್ನು ಮಾಡಿದನು. ಅವನು ಜಾನುವಾರುಗಳಿಂದಲೂ ಜೋಡಿಗಳನ್ನು ಮಾಡಿದನು. ಅದರ ಮೂಲಕ ಅವನು ನಿಮ್ಮನ್ನು ಹಬ್ಬಿಸುತ್ತಾನೆ. ಅವನಿಗೆ ಹೋಲಿಕೆಯಾಗಿ ಯಾವುದೂ ಇಲ್ಲ. ಅವನು ಎಲ್ಲವನ್ನು ಕೇಳುವವನು ಮತ್ತು ನೋಡುವವನಾಗಿದ್ದಾನೆ. | أَنفُسِكُمْ أَزْوَٰجًا وَمِنَ ٱلْأَنْعَٰمِ أَزْوَٰجًا يَذْرَؤُكُمْ فِيهِ ۚ لَيْسَ كَمِثْلِهِۦ شَىْءٌ ۖ وَهُوَ ٱلسَّمِيعُ ٱلْبَصِيرُ ﴿١١﴾ |
| 12. ಭೂಮ್ಯಾಕಾಶಗಳ ಕೀಲಿಗಳು ಅವನಿಗೆ ಸೇರಿದ್ದು. ಅವನು ಇಚ್ಛಿಸುವವರಿಗೆ ಅವನು ಉಪಜೀವನವನ್ನು ವಿಶಾಲಗೊಳಿಸು-ತ್ತಾನೆ ಮತ್ತು ಅವನು ಇಚ್ಛಿಸುವವರಿಗೆ ಅದನ್ನು ಇಕ್ಕಟ್ಟುಗೊಳಿ-ಸುತ್ತಾನೆ. ನಿಶ್ಚಯವಾಗಿಯೂ ಅವನು ಎಲ್ಲಾ ವಿಷಯಗಳನ್ನೂ ತಿಳಿದವನಾಗಿದ್ದಾನೆ. | لَهُۥ مَقَالِيدُ ٱلسَّمَٰوَٰتِ وَٱلْأَرْضِ ۖ يَبْسُطُ ٱلرِّزْقَ لِمَن يَشَآءُ وَيَقْدِرُ ۚ إِنَّهُۥ بِكُلِّ شَىْءٍ عَلِيمٌ ﴿١٢﴾ |
| 13. ಅಲ್ಲಾಹು ನೂಹರಿಗೆ ಸಂಸ್ಥಾಪಿಸಬೇಕೆಂದು ಆದೇಶಿಸಿದ, ನಿಮಗೆ ದೇವವಾಣಿಯ ಮೂಲಕ ಕಳುಹಿಸಿದ ಮತ್ತು ಇಬ್ರಾಹೀಮ್, ಮೂಸಾ, ಈಸಾ ಮುಂತಾದವರಿಗೆ ಆದೇಶಿಸಿದ ಅದೇ ಧರ್ಮವನ್ನು ನಾವು ನಿಮಗೆ ನಿಶ್ಚಯಿಸಿದ್ದೇವೆ. ಅಂದರೆ ನೀವು ಧರ್ಮವನ್ನು ಸಂಸ್ಥಾಪಿಸಿರಿ ಮತ್ತು ಅದರಲ್ಲಿ ಭಿನ್ನರಾಗಬೇಡಿ. ನೀವು ಆ ಬಹುದೇವವಿಶ್ವಾಸಿಗಳನ್ನು ಯಾವುದರ ಕಡೆಗೆ ಕರೆಯುತ್ತಿದ್ದೀರೋ ಅದು ಅವರಿಗೆ ಸಂಬಂಧಿಸಿದಂತೆ ಭಾರವಾಗಿದೆ. ಅಲ್ಲಾಹು ಅವನು ಇಚ್ಛಿಸುವವರನ್ನು ಅವನು ಆರಿಸಿಕೊಂಡವರಲ್ಲಿ ಸೇರಿಸುತ್ತಾನೆ ಮತ್ತು ಅವನ ಕಡೆಗೆ ತಿರುಗುವವರನ್ನು ಸರಿಯಾದ ಮಾರ್ಗದಲ್ಲಿ ಸೇರಿಸುತ್ತಾನೆ. | شَرَعَ لَكُم مِّنَ ٱلدِّينِ مَا وَصَّىٰ بِهِۦ نُوحًا وَٱلَّذِىٓ أَوْحَيْنَآ إِلَيْكَ وَمَا وَصَّيْنَا بِهِۦٓ إِبْرَٰهِيمَ وَمُوسَىٰ وَعِيسَىٰٓ ۖ أَنْ أَقِيمُوا۟ ٱلدِّينَ وَلَا تَتَفَرَّقُوا۟ فِيهِ ۚ كَبُرَ عَلَى ٱلْمُشْرِكِينَ مَا تَدْعُوهُمْ إِلَيْهِ ۚ ٱللَّهُ يَجْتَبِىٓ إِلَيْهِ مَن يَشَآءُ وَيَهْدِىٓ إِلَيْهِ مَن يُنِيبُ ﴿١٣﴾ |
| 14. ಅವರ ಬಳಿಗೆ ಜ್ಞಾನವು ಬಂದ ಬಳಿಕವೇ ಅವರು ಭಿನ್ನರಾದರು. (ಅದೂ ಕೂಡ) ಅವರು ಪರಸ್ಪರ ಹೊಂದಿದ್ದ ವಿರೋಧದಿಂದಾಗಿ. ಒಂದು ನಿಶ್ಚಿತ ಅವಧಿಯವರೆಗೆ ಮುಂದೂಡುತ್ತೇನೆ ಎಂಬ ನಿಮ್ಮ ಪರಿಪಾಲಕನ (ಅಲ್ಲಾಹನ) ವಚನವು ಮೊದಲೇ ಇಲ್ಲ-ದಿರುತ್ತಿದ್ದರೆ ಅವರ ನಡುವೆ (ತಕ್ಷಣ) ತೀರ್ಪು ನೀಡಲಾಗುತ್ತಿತ್ತು. ಅವರ ನಂತರ ಗ್ರಂಥದ ವಾರಸುದಾರರಾದವರು ಯಾರೋ ನಿಶ್ಚಯವಾಗಿಯೂ ಅವರು ಅದರ ಬಗ್ಗೆ ಗೊಂದಲಪೂರ್ಣ ಸಂಶಯದಲ್ಲಿದ್ದಾರೆ. | وَمَا تَفَرَّقُوٓا۟ إِلَّا مِنۢ بَعْدِ مَا جَآءَهُمُ ٱلْعِلْمُ بَغْيًۢا بَيْنَهُمْ ۚ وَلَوْلَا كَلِمَةٌ سَبَقَتْ مِن رَّبِّكَ إِلَىٰٓ أَجَلٍ مُّسَمًّى لَّقُضِىَ بَيْنَهُمْ ۚ وَإِنَّ ٱلَّذِينَ أُورِثُوا۟ ٱلْكِتَٰبَ مِنۢ بَعْدِهِمْ لَفِى شَكٍّ مِّنْهُ مُرِيبٍ ﴿١٤﴾ |
| 15. ನೀವು ಇದೇ ರೀತಿ ಜನರನ್ನು ಕರೆಯುತ್ತಿರಿ. ನಿಮಗೆ ಏನು ಆಜ್ಞಾಪಿ-ಸಲಾಗಿದೆಯೋ ಅದರಲ್ಲಿ ದೃಢವಾಗಿ ನಿಲ್ಲಿರಿ. ಅವರ ಸ್ವೇಚ್ಛೆಗಳನ್ನು ಹಿಂಬಾಲಿಸಬೇಡಿ. ಹೇಳಿರಿ: "ಅಲ್ಲಾಹು ಅವತೀರ್ಣಗೊಳಿಸಿದ ಎಲ್ಲಾ ಗ್ರಂಥಗಳಲ್ಲೂ ನಾನು ವಿಶ್ವಾಸವಿಟ್ಟಿದ್ದೇನೆ. ನಿಮ್ಮ ನಡುವೆ | فَلِذَٰلِكَ فَٱدْعُ ۖ وَٱسْتَقِمْ كَمَآ أُمِرْتَ ۖ وَلَا تَتَّبِعْ أَهْوَآءَهُمْ ۖ وَقُلْ ءَامَنتُ بِمَآ أَنزَلَ ٱللَّهُ مِن كِتَٰبٍ ۖ وَأُمِرْتُ لِأَعْدِلَ بَيْنَكُمُ ۖ ٱللَّهُ رَبُّنَا |

ನ್ಯಾಯದಿಂದ ವರ್ತಿಸಲು ನನಗೆ ಆಜ್ಞಾಪಿಸಲಾಗಿದೆ. ಅಲ್ಲಾಹನೇ ನಮ್ಮ ಮತ್ತು ನಿಮ್ಮ ಪರಿಪಾಲಕ. ನಮಗೆ ನಮ್ಮ ಕರ್ಮಗಳು ಮತ್ತು ನಿಮಗೆ ನಿಮ್ಮ ಕರ್ಮಗಳು. ನಮ್ಮ ಮತ್ತು ನಿಮ್ಮ ಮಧ್ಯೆ ಯಾವುದೇ ತರ್ಕವಿಲ್ಲ. ಅಲ್ಲಾಹು ನಮ್ಮನ್ನು ಪರಸ್ಪರ ಒಟ್ಟುಗೂಡಿಸುವನು. ಗಮ್ಯಸ್ಥಾನವು ಅವನ ಬಳಿಗೇ ಆಗಿದೆ.”

وَرَبُّكُمۡۖ لَنَآ أَعۡمَٰلُنَا وَلَكُمۡ أَعۡمَٰلُكُمۡۖ لَا حُجَّةَ بَيۡنَنَا وَبَيۡنَكُمُۖ ٱللَّهُ يَجۡمَعُ بَيۡنَنَاۖ وَإِلَيۡهِ ٱلۡمَصِيرُ ١٥

---

16. ಜನರು ಅಲ್ಲಾಹನ ಮಾತನ್ನು ಅಂಗೀಕರಿಸಿದ[1] ಬಳಿಕ ಅಲ್ಲಾಹನ ವಿಷಯದಲ್ಲಿ ತರ್ಕಿಸುವವರು ಯಾರೋ ಅವರ ತರ್ಕವು ಅಲ್ಲಾಹನ ದೃಷ್ಟಿಯಲ್ಲಿ ನಿರರ್ಥಕವಾಗಿದೆ. ಅವರ ಮೇಲೆ ಕೋಪವಿದೆ ಮತ್ತು ಅವರಿಗೆ ಕಠೋರ ಶಿಕ್ಷೆಯಿದೆ.

وَٱلَّذِينَ يُحَآجُّونَ فِي ٱللَّهِ مِنۢ بَعۡدِ مَا ٱسۡتُجِيبَ لَهُۥ حُجَّتُهُمۡ دَاحِضَةٌ عِندَ رَبِّهِمۡ وَعَلَيۡهِمۡ غَضَبٞ وَلَهُمۡ عَذَابٞ شَدِيدٌ ١٦

---

17. ಅಲ್ಲಾಹು ಸತ್ಯದೊಂದಿಗೆ ಗ್ರಂಥವನ್ನು ಅವತೀರ್ಣಗೊಳಿಸಿದ್ದಾನೆ ಮತ್ತು ತಕ್ಕಡಿಯನ್ನು (ಕೂಡ ಇಳಿಸಿಕೊಟ್ಟಿದ್ದಾನೆ). ನಿಮಗೇನು ಗೊತ್ತು? ಅಂತ್ಯಸಮಯವು ಸಮೀಪದಲ್ಲೇ ಇರಬಹುದು.

ٱللَّهُ ٱلَّذِيٓ أَنزَلَ ٱلۡكِتَٰبَ بِٱلۡحَقِّ وَٱلۡمِيزَانَۗ وَمَا يُدۡرِيكَ لَعَلَّ ٱلسَّاعَةَ قَرِيبٞ ١٧

---

18. ಅದರಲ್ಲಿ ವಿಶ್ವಾಸವಿಡದವರು ಅದಕ್ಕಾಗಿ (ಅಂತ್ಯಸಮಯಕ್ಕಾಗಿ) ಆತುರಪಡುತ್ತಾರೆ. ಆದರೆ ಸತ್ಯವಿಶ್ವಾಸಿಗಳು ಅದರ ಬಗ್ಗೆ ಭಯಭೀತರಾಗಿದ್ದಾರೆ. ಅವರು ಅದು ಸತ್ಯವೆಂದು ತಿಳಿದಿದ್ದಾರೆ. ತಿಳಿಯಿರಿ! ನಿಶ್ಚಯವಾಗಿಯೂ ಅಂತ್ಯಸಮಯದ ವಿಷಯದಲ್ಲಿ ತರ್ಕಿಸುವವರು ಯಾರೋ ಅವರು ವಿದೂರ ದುರ್ಮಾರ್ಗದಲ್ಲಿದ್ದಾರೆ.

يَسۡتَعۡجِلُ بِهَا ٱلَّذِينَ لَا يُؤۡمِنُونَ بِهَاۖ وَٱلَّذِينَ ءَامَنُواْ مُشۡفِقُونَ مِنۡهَا وَيَعۡلَمُونَ أَنَّهَا ٱلۡحَقُّۗ أَلَآ إِنَّ ٱلَّذِينَ يُمَارُونَ فِي ٱلسَّاعَةِ لَفِي ضَلَٰلِۭ بَعِيدٍ ١٨

---

19. ಅಲ್ಲಾಹು ಅವನ ದಾಸರ ಮೇಲೆ ದಯೆಯನ್ನು ಹೊಂದಿದ್ದಾನೆ. ಅವನು ಇಚ್ಛಿಸುವವರಿಗೆ ಅವನು ಉಪಜೀವನವನ್ನು ಒದಗಿಸುತ್ತಾನೆ. ಅವನು ಮಹಾ ಶಕ್ತಿಶಾಲಿ ಮತ್ತು ಪ್ರಬಲನಾಗಿದ್ದಾನೆ.

ٱللَّهُ لَطِيفُۢ بِعِبَادِهِۦ يَرۡزُقُ مَن يَشَآءُۖ وَهُوَ ٱلۡقَوِيُّ ٱلۡعَزِيزُ ١٩

---

20. ಯಾರು ಪರಲೋಕದ ಬೆಳೆಯನ್ನು ಬಯಸುತ್ತಾನೋ ಅವನ ಬೆಳೆಯಲ್ಲಿ ನಾವು ಅಭಿವೃದ್ಧಿಯನ್ನು ನೀಡುವೆವು. ಯಾರು ಇಹಲೋಕದ ಬೆಳೆಯನ್ನು ಬಯಸುತ್ತಾನೋ ಅವನಿಗೆ ನಾವು ಇಹಲೋಕದಿಂದ ನೀಡುವೆವು. ಪರಲೋಕದಲ್ಲಿ ಅವನಿಗೆ ಯಾವುದೇ ಪಾಲು ಇರುವುದಿಲ್ಲ.

مَن كَانَ يُرِيدُ حَرۡثَ ٱلۡأٓخِرَةِ نَزِدۡ لَهُۥ فِي حَرۡثِهِۦۖ وَمَن كَانَ يُرِيدُ حَرۡثَ ٱلدُّنۡيَا نُؤۡتِهِۦ مِنۡهَا وَمَا لَهُۥ فِي ٱلۡأٓخِرَةِ مِن نَّصِيبٍ ٢٠

---

21. ಅಲ್ಲಾಹು ಆಜ್ಞಾಪಿಸದ ವಿಷಯಗಳನ್ನು ಅವರಿಗೆ ಧರ್ಮವನ್ನಾಗಿ ಮಾಡಿಕೊಟ್ಟ ಯಾರಾದರೂ ದೇವ-ಸಹಭಾಗಿಗಳು

أَمۡ لَهُمۡ شُرَكَٰٓؤُاْ شَرَعُواْ لَهُم مِّنَ ٱلدِّينِ مَا لَمۡ يَأۡذَنۢ بِهِ ٱللَّهُۚ وَلَوۡلَا كَلِمَةُ ٱلۡفَصۡلِ لَقُضِيَ بَيۡنَهُمۡۗ

---

[1] ಅಂದರೆ ಸತ್ಯವಿಶ್ವಾಸಿಗಳು ಅಲ್ಲಾಹನ ಮತ್ತು ಪ್ರವಾದಿಯ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮಾತನ್ನು ಅಂಗೀಕರಿಸಿ ಅವರಲ್ಲಿ ವಿಶ್ವಾಸವಿಟ್ಟಿದ್ದಾರೆ. ಸತ್ಯನಿಷೇಧಿಗಳು ಅವರೊಡನೆ ತರ್ಕಿಸುತ್ತಾ, ಜಗಳವಾಡುತ್ತಾ ಅವರನ್ನು ಪುನಃ ಹಿಂದಿನ ಧರ್ಮಕ್ಕೆ ಮರಳಿಸಲು ಪ್ರಯತ್ನಿಸುತ್ತಾರೆ.

وَإِنَّ ٱلظَّٰلِمِينَ لَهُمۡ عَذَابٌ أَلِيمٞ ٢١

ಅವರಿಗಿದ್ದಾರೆಯೇ? ತೀರ್ಪು ನೀಡುವ ದಿನದ ಕುರಿತಾದ ವಾಗ್ದಾನವು ಇಲ್ಲದಿರುತ್ತಿದ್ದರೆ ಅವರ ನಡುವೆ ಈಗಾಗಲೇ ತೀರ್ಪು ನೀಡಲಾಗುತ್ತಿತ್ತು. ನಿಶ್ಚಯವಾಗಿಯೂ ಅಕ್ರಮಿಗಳಿಗೆ ಯಾತನಾಮಯ ಶಿಕ್ಷೆಯಿದೆ.

---

تَرَى ٱلظَّٰلِمِينَ مُشۡفِقِينَ مِمَّا كَسَبُواْ وَهُوَ وَاقِعُۢ بِهِمۡۗ وَٱلَّذِينَ ءَامَنُواْ وَعَمِلُواْ ٱلصَّٰلِحَٰتِ فِي رَوۡضَاتِ ٱلۡجَنَّاتِۖ لَهُم مَّا يَشَآءُونَ عِندَ رَبِّهِمۡۚ ذَٰلِكَ هُوَ ٱلۡفَضۡلُ ٱلۡكَبِيرُ ٢٢

22. ಆ ಅಕ್ರಮಿಗಳು (ಪರಲೋಕದಲ್ಲಿ) ಅವರ ಕರ್ಮಗಳ ಬಗ್ಗೆ ಭಯಪಡುವುದನ್ನು ನೀವು ನೋಡುವಿರಿ. ಅದರ ದುಷ್ಫಲವು ಅವರ ಮೇಲೆ ಸಂಭವಿಸಿಯೇ ತೀರುತ್ತದೆ. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಸ್ವರ್ಗದ ಉದ್ಯಾನಗಳಲ್ಲಿರುವರು. ಅವರು ಇಚ್ಛಿಸುವುದೆಲ್ಲವೂ ಅವರಿಗೆ ಅವರ ಪರಿಪಾಲಕನ (ಅಲ್ಲಾಹನ) ಬಳಿ ಇರುವುದು. ಅದೇ ಮಹಾ ಔದಾರ್ಯ.

---

ذَٰلِكَ ٱلَّذِي يُبَشِّرُ ٱللَّهُ عِبَادَهُ ٱلَّذِينَ ءَامَنُواْ وَعَمِلُواْ ٱلصَّٰلِحَٰتِۗ قُل لَّآ أَسۡـَٔلُكُمۡ عَلَيۡهِ أَجۡرًا إِلَّا ٱلۡمَوَدَّةَ فِي ٱلۡقُرۡبَىٰۗ وَمَن يَقۡتَرِفۡ حَسَنَةٗ نَّزِدۡ لَهُۥ فِيهَا حُسۡنًاۚ إِنَّ ٱللَّهَ غَفُورٞ شَكُورٌ ٢٣

23. ಅದು ಸತ್ಯವಿಶ್ವಾಸವನ್ನು ಸ್ವೀಕರಿಸಿ ಸತ್ಕರ್ಮವೆಸಗಿದ ತನ್ನ ದಾಸರಿಗೆ ಅಲ್ಲಾಹು ನೀಡುವ ಸುವಾರ್ತೆಯಾಗಿದೆ. ಹೇಳಿರಿ: "ಅದಕ್ಕಾಗಿ ನಾನು ನಿಮ್ಮೊಂದಿಗೆ ಯಾವುದೇ ಪ್ರತಿಫಲವನ್ನು ಬೇಡುವುದಿಲ್ಲ. ಆದರೆ ಹತ್ತಿರದ ಸಂಬಂಧಿಕರಲ್ಲಿರುವ ಪ್ರೀತಿಯ ಹೊರತು."[1] ಯಾರು ಒಳಿತು ಮಾಡುತ್ತಾನೋ ಅವನಿಗೆ ನಾವು ಅದರಿಂದಾಗಿ ಒಳಿತನ್ನು ಹೆಚ್ಚಿಸಿಕೊಡುವೆವು. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ಕೃತಜ್ಞನಾಗಿದ್ದಾನೆ.

---

أَمۡ يَقُولُونَ ٱفۡتَرَىٰ عَلَى ٱللَّهِ كَذِبٗاۖ فَإِن يَشَإِ ٱللَّهُ يَخۡتِمۡ عَلَىٰ قَلۡبِكَۗ وَيَمۡحُ ٱللَّهُ ٱلۡبَٰطِلَ وَيُحِقُّ ٱلۡحَقَّ بِكَلِمَٰتِهِۦٓۚ إِنَّهُۥ عَلِيمُۢ بِذَاتِ ٱلصُّدُورِ ٢٤

24. ಅವರು (ಪ್ರವಾದಿ) ಅಲ್ಲಾಹನ ಮೇಲೆ ಸುಳ್ಳನ್ನು ಆರೋಪಿದ್ದಾರೆಂದು ಅವರು ಹೇಳುತ್ತಿದ್ದಾರೆಯೇ? ಅಲ್ಲಾಹು ಇಚ್ಛಿಸಿದರೆ ನಿಮ್ಮ ಹೃದಯಕ್ಕೆ ಮೊಹರು ಹಾಕುವನು. ಅಲ್ಲಾಹು ತನ್ನ ವಚನಗಳ ಮೂಲಕ ಅಸತ್ಯವನ್ನು ಅಳಿಸುತ್ತಾನೆ ಮತ್ತು ಸತ್ಯವನ್ನು ಸ್ಥಿರಗೊಳಿಸುತ್ತಾನೆ. ನಿಶ್ಚಯವಾಗಿಯೂ ಅವನು ಹೃದಯಗಳಲ್ಲಿರುವುದನ್ನು ತಿಳಿಯುತ್ತಾನೆ.

---

وَهُوَ ٱلَّذِي يَقۡبَلُ ٱلتَّوۡبَةَ عَنۡ عِبَادِهِۦ وَيَعۡفُواْ عَنِ ٱلسَّيِّـَٔاتِ وَيَعۡلَمُ مَا تَفۡعَلُونَ ٢٥

25. ಅವನು ತನ್ನ ದಾಸರಿಂದ ಪಶ್ಚಾತ್ತಾಪವನ್ನು ಸ್ವೀಕರಿಸುತ್ತಾನೆ ಮತ್ತು ಅವರ ತಪ್ಪುಗಳನ್ನು ಮನ್ನಿಸುತ್ತಾನೆ. ನೀವು ಮಾಡುತ್ತಿರುವುದೆಲ್ಲ-ವನ್ನೂ ಅವನು ತಿಳಿಯುತ್ತಾನೆ.

---

وَيَسۡتَجِيبُ ٱلَّذِينَ ءَامَنُواْ وَعَمِلُواْ ٱلصَّٰلِحَٰتِ وَيَزِيدُهُم مِّن فَضۡلِهِۦۚ وَٱلۡكَٰفِرُونَ لَهُمۡ عَذَابٞ

26. ಸತ್ಯವಿಶ್ವಾಸಿಗಳಿಗೆ ಮತ್ತು ಸತ್ಕರ್ಮವೆಸಗಿದವರಿಗೆ (ಅವರ ಪ್ರಾರ್ಥನೆಗಳಿಗೆ) ಅವನು ಉತ್ತರ ನೀಡುತ್ತಾನೆ ಮತ್ತು ತನ್ನ

---

[1] ಪ್ರವಾದಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರವರ ಮತ್ತು ಕುರೈಶರ ನಡುವೆ ಕುಟುಂಬ ಸಂಬಂಧವಿತ್ತು. ಈ ವಚನದ ಅರ್ಥವೇನೆಂದರೆ, ಈ ಸಂದೇಶವನ್ನು ನಿಮಗೆ ತಲುಪಿಸಿ ನಿಮಗೆ ಉಪದೇಶ ನೀಡಿದ್ದಕ್ಕೆ ನಾನು ನಿಮ್ಮಿಂದ ಯಾವುದೇ ಉಪಕಾರ ಬಯಸುವುದಿಲ್ಲ. ನೀವು ನನ್ನ ಸಂದೇಶ ಸ್ವೀಕರಿಸದಿದ್ದರೂ ಪರವಾಗಿಲ್ಲ. ಆದರೆ ನನ್ನ ಮತ್ತು ನಿಮ್ಮ ನಡುವೆ ಕುಟುಂಬ ಸಂಬಂಧವಿದೆ. ಕನಿಷ್ಠ ಅದನ್ನಾದರೂ ಗೌರವಿಸಿ ನನ್ನನ್ನು ಅವಮಾನಿಸುವುದು, ನನಗೆ ಕಿರುಕುಳ ಮತ್ತು ಹಿಂಸೆ ಕೊಡುವುದನ್ನು ನಿಲ್ಲಿಸಿ. ನನ್ನ ಕರ್ತವ್ಯವನ್ನು ನಿರ್ವಹಿಸಲು ನನ್ನನ್ನು ಬಿಟ್ಟುಬಿಡಿ.

ಔದಾರ್ಯವನ್ನು ಅವರಿಗೆ ಹೆಚ್ಚಿಸಿಕೊಡುತ್ತಾನೆ. ಸತ್ಯನಿಷೇಧಿಗಳಿಗೆ ಕಠೋರ ಶಿಕ್ಷೆಯಿದೆ.

شَدِيدٞ ٢٦

---

27. ಅಲ್ಲಾಹು ಅವನ ದಾಸರಿಗೆ ಉಪಜೀವನವನ್ನು ವಿಶಾಲಗೊಳಿಸುತ್ತಿದ್ದರೆ ಅವರು ಭೂಮಿಯಲ್ಲಿ ಅತಿರೇಕವೆಸಗುತ್ತಿದ್ದರು. ಆದರೆ ಅವನು ಇಚ್ಛಿಸುವ ಒಂದು ನಿರ್ಣಯಕ್ಕೆ ಅನುಗುಣವಾಗಿಯೇ ಅವನು ಇಳಿಸಿಕೊಡುತ್ತಾನೆ. ನಿಶ್ಚಯವಾಗಿಯೂ ಅವನು ತನ್ನ ದಾಸರ ಬಗ್ಗೆ ಸೂಕ್ಷ್ಮವಾಗಿ ತಿಳಿದವನು ಮತ್ತು ನೋಡುವವನಾಗಿದ್ದಾನೆ.

وَلَوۡ بَسَطَ ٱللَّهُ ٱلرِّزۡقَ لِعِبَادِهِۦ لَبَغَوۡاْ فِي ٱلۡأَرۡضِ وَلَٰكِن يُنَزِّلُ بِقَدَرٖ مَّا يَشَآءُۚ إِنَّهُۥ بِعِبَادِهِۦ خَبِيرُۢ بَصِيرٞ ٢٧

---

28. ಅವನೇ ಮನುಷ್ಯರು ನಿರಾಶರಾದ ಬಳಿಕ ಮಳೆಯನ್ನು ಸುರಿಸುವವನು ಮತ್ತು ತನ್ನ ದಯೆಯನ್ನು ಹಬ್ಬಿಸುವವನು. ಅವನು ರಕ್ಷಕನು ಮತ್ತು ಸ್ತುತ್ಯರ್ಹನಾಗಿದ್ದಾನೆ.

وَهُوَ ٱلَّذِي يُنَزِّلُ ٱلۡغَيۡثَ مِنۢ بَعۡدِ مَا قَنَطُواْ وَيَنشُرُ رَحۡمَتَهُۥۚ وَهُوَ ٱلۡوَلِيُّ ٱلۡحَمِيدُ ٢٨

---

29. ಭೂಮ್ಯಾಕಾಶಗಳನ್ನು ಸೃಷ್ಟಿಸಿದ್ದು ಹಾಗೂ ಅವುಗಳಲ್ಲಿ ಜೀವಿಗಳನ್ನು ಹಬ್ಬಿಸಿದ್ದು ಅವನ ದೃಷ್ಟಾಂತಗಳಲ್ಲಿ ಸೇರಿದ್ದಾಗಿವೆ. ಅವನು ಇಚ್ಛಿಸುವಾಗ ಅವರೆಲ್ಲರನ್ನು ಒಟ್ಟುಗೂಡಿಸುವ ಸಾಮರ್ಥ್ಯ ಅವನಿಗಿದೆ.

وَمِنۡ ءَايَٰتِهِۦ خَلۡقُ ٱلسَّمَٰوَٰتِ وَٱلۡأَرۡضِ وَمَا بَثَّ فِيهِمَا مِن دَآبَّةٖۚ وَهُوَ عَلَىٰ جَمۡعِهِمۡ إِذَا يَشَآءُ قَدِيرٞ ٢٩

---

30. ನಿಮಗೇನಾದರೂ ವಿಪತ್ತು ಸಂಭವಿಸಿದರೆ ಅದು ನಿಮ್ಮ ಕೈಗಳು ಮಾಡಿದ ಕರ್ಮಗಳ ಪ್ರತಿಫಲವಾಗಿದೆ. ಹೆಚ್ಚಿನವುಗಳನ್ನು ಅವನು ಮನ್ನಿಸುತ್ತಾನೆ.

وَمَآ أَصَٰبَكُم مِّن مُّصِيبَةٖ فَبِمَا كَسَبَتۡ أَيۡدِيكُمۡ وَيَعۡفُواْ عَن كَثِيرٖ ٣٠

---

31. ಭೂಮಿಯಲ್ಲಿ (ಅಲ್ಲಾಹನನ್ನು) ಸೋಲಿಸಲು ನಿಮಗೆ ಸಾಧ್ಯವಿಲ್ಲ. ಅಲ್ಲಾಹನ ಹೊರತು ನಿಮಗೆ ಬೇರೆ ರಕ್ಷಕರು ಅಥವಾ ಸಹಾಯಕರಿಲ್ಲ.

وَمَآ أَنتُم بِمُعۡجِزِينَ فِي ٱلۡأَرۡضِۖ وَمَا لَكُم مِّن دُونِ ٱللَّهِ مِن وَلِيّٖ وَلَا نَصِيرٖ ٣١

---

32. ಸಮುದ್ರಗಳಲ್ಲಿ ಚಲಿಸುವ ಬೆಟ್ಟಗಳಂತಹ ಹಡಗುಗಳು ಅವನ ದೃಷ್ಟಾಂತಗಳಲ್ಲಿ ಸೇರಿದ್ದಾಗಿವೆ.

وَمِنۡ ءَايَٰتِهِ ٱلۡجَوَارِ فِي ٱلۡبَحۡرِ كَٱلۡأَعۡلَٰمِ ٣٢

---

33. ಅವನು ಇಚ್ಛಿಸಿದರೆ ಗಾಳಿಯನ್ನು ಸ್ತಬ್ದಗೊಳಿಸುವನು. ಆಗ ಅವು ಸಮುದ್ರಗಳಲ್ಲಿ ನಿಶ್ಚಲವಾಗಿ ನಿಲ್ಲುವುವು. ನಿಶ್ಚಯವಾಗಿಯೂ ತಾಳ್ಮೆಯಿರುವ ಮತ್ತು ಕೃತಜ್ಞರಾಗಿರುವ ಎಲ್ಲರಿಗೂ ಅದರಲ್ಲಿ ದೃಷ್ಟಾಂತಗಳಿವೆ.

إِن يَشَأۡ يُسۡكِنِ ٱلرِّيحَ فَيَظۡلَلۡنَ رَوَاكِدَ عَلَىٰ ظَهۡرِهِۦٓۚ إِنَّ فِي ذَٰلِكَ لَأٓيَٰتٖ لِّكُلِّ صَبَّارٖ شَكُورٍ ٣٣

---

34. ಅಥವಾ ಅವರು ಮಾಡಿದ ಕರ್ಮಗಳ ಫಲವಾಗಿ ಅವನು ಅವುಗಳನ್ನು (ಹಡಗುಗಳನ್ನು) ನಾಶ ಮಾಡುವನು. ಹೆಚ್ಚಿನವುಗಳನ್ನು ಅವನು ಮನ್ನಿಸುತ್ತಾನೆ.

أَوۡ يُوبِقۡهُنَّ بِمَا كَسَبُواْ وَيَعۡفُ عَن كَثِيرٖ ٣٤

35. ನಮ್ಮ ವಚನಗಳ ವಿಷಯದಲ್ಲಿ ತರ್ಕಿಸುವವರು ಯಾರೋ ಅವರಿಗೆ ತಪ್ಪಿಸಿಕೊಳ್ಳಲು ಯಾವುದೇ ಸ್ಥಳವಿಲ್ಲವೆಂದು ತಿಳಿದಿರಲಿ!

وَيَعۡلَمَ ٱلَّذِينَ يُجَٰدِلُونَ فِيٓ ءَايَٰتِنَا مَا لَهُم مِّن مَّحِيصٖ ٣٥

36. ನಿಮಗೇನಾದರೂ ನೀಡಲಾಗಿದ್ದರೆ ಅದು ಇಹಲೋಕ ಜೀವನದ (ತಾತ್ಕಾಲಿಕ) ಸವಲತ್ತುಗಳು ಮಾತ್ರ. ಅಲ್ಲಾಹನ ಬಳಿಯಿರುವುದು ಅತ್ಯುತ್ತಮ ಮತ್ತು ಅತಿಹೆಚ್ಚು ಬಾಳಿಕೆಯುಳ್ಳದ್ದಾಗಿದ್ದು, ಅದು ಸತ್ಯವಿಶ್ವಾಸಿಗಳಿಗೆ ಮತ್ತು ತಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ಭರವಸೆಯಿಟ್ಟವರಿಗೆ ದೊರೆಯುತ್ತದೆ.

فَمَآ أُوتِيتُم مِّن شَيۡءٖ فَمَتَٰعُ ٱلۡحَيَوٰةِ ٱلدُّنۡيَاۖ وَمَا عِندَ ٱللَّهِ خَيۡرٞ وَأَبۡقَىٰ لِلَّذِينَ ءَامَنُواْ وَعَلَىٰ رَبِّهِمۡ يَتَوَكَّلُونَ ٣٦

37. ಅವರು ಮಹಾಪಾಪಗಳು ಮತ್ತು ಅಶ್ಲೀಲಕೃತ್ಯಗಳಿಂದ ದೂರವಾಗುತ್ತಾರೆ ಮತ್ತು ಕೋಪ ಬರುವಾಗ ಕ್ಷಮಿಸುತ್ತಾರೆ.

وَٱلَّذِينَ يَجۡتَنِبُونَ كَبَٰٓئِرَ ٱلۡإِثۡمِ وَٱلۡفَوَٰحِشَ وَإِذَا مَا غَضِبُواْ هُمۡ يَغۡفِرُونَ ٣٧

38. ಅವರು ತಮ್ಮ ಪರಿಪಾಲಕನ (ಅಲ್ಲಾಹನ) ಕರೆಗೆ ಉತ್ತರಿಸುತ್ತಾರೆ, ನಮಾಝ್ ಸಂಸ್ಥಾಪಿಸುತ್ತಾರೆ, ತಮ್ಮ ಕೆಲಸಕಾರ್ಯಗಳನ್ನು ಪರಸ್ಪರ ಸಮಾಲೋಚನೆಯಿಂದ ತೀರ್ಮಾನಿಸುತ್ತಾರೆ ಮತ್ತು ನಾವು ಒದಗಿಸಿದ (ಧನದಿಂದ) ಖರ್ಚು ಮಾಡುತ್ತಾರೆ.

وَٱلَّذِينَ ٱسۡتَجَابُواْ لِرَبِّهِمۡ وَأَقَامُواْ ٱلصَّلَوٰةَ وَأَمۡرُهُمۡ شُورَىٰ بَيۡنَهُمۡ وَمِمَّا رَزَقۡنَٰهُمۡ يُنفِقُونَ ٣٨

39. ಅವರ ಮೇಲೆ ಯಾವುದಾದರೂ ದೌರ್ಜನ್ಯವುಂಟಾದರೆ ಅವರು ಪ್ರತೀಕಾರ ಮಾತ್ರ ತೆಗೆದುಕೊಳ್ಳುತ್ತಾರೆ.[1]

وَٱلَّذِينَ إِذَآ أَصَابَهُمُ ٱلۡبَغۡيُ هُمۡ يَنتَصِرُونَ ٣٩

40. ಕೆಡುಕಿನ ಪ್ರತಿಫಲವು ಅದರಂತಿರುವ ಕೆಡುಕಾಗಿದೆ. ಆದರೆ ಯಾರಾದರೂ ಮನ್ನಿಸಿದರೆ ಮತ್ತು ಸಂಧಾನ ಮಾಡಿಕೊಂಡರೆ ಅವನಿಗೆ ಪ್ರತಿಫಲ ನೀಡುವುದು ಅಲ್ಲಾಹನ ಹೊಣೆಗಾರಿಕೆಯಾಗಿದೆ. ನಿಶ್ಚಯವಾಗಿಯೂ ಅವನು ಅಕ್ರಮಿಗಳನ್ನು ಇಷ್ಟಪಡುವುದಿಲ್ಲ.

وَجَزَٰٓؤُاْ سَيِّئَةٖ سَيِّئَةٞ مِّثۡلُهَاۖ فَمَنۡ عَفَا وَأَصۡلَحَ فَأَجۡرُهُۥ عَلَى ٱللَّهِۚ إِنَّهُۥ لَا يُحِبُّ ٱلظَّٰلِمِينَ ٤٠

41. ದೌರ್ಜನ್ಯಕ್ಕೆ ಗುರಿಯಾದ ನಂತರ ಯಾರಾದರೂ (ಅದಕ್ಕೆ ಸಮಾನವಾದ) ಪ್ರತೀಕಾರ ಕೈಗೊಂಡರೆ ಅಂತಹ ಜನರ ಮೇಲೆ (ತಪ್ಪು ಹೊರಿಸಲು) ಯಾವುದೇ ಮಾರ್ಗವಿಲ್ಲ.

وَلَمَنِ ٱنتَصَرَ بَعۡدَ ظُلۡمِهِۦ فَأُوْلَٰٓئِكَ مَا عَلَيۡهِم مِّن سَبِيلٍ ٤١

42. ಮಾರ್ಗವಿರುವುದು ಜನರಿಗೆ ಅನ್ಯಾಯವೆಸಗುವ ಮತ್ತು ಭೂಮಿಯಲ್ಲಿ ಅನ್ಯಾಯವಾಗಿ ಅತಿರೇಕವೆಸಗುವವರ ಮೇಲೆ ಮಾತ್ರವಾಗಿದೆ. ಅವರಿಗೆ ಯಾತನಾಮಯ ಶಿಕ್ಷೆಯಿದೆ.

إِنَّمَا ٱلسَّبِيلُ عَلَى ٱلَّذِينَ يَظۡلِمُونَ ٱلنَّاسَ وَيَبۡغُونَ فِي ٱلۡأَرۡضِ بِغَيۡرِ ٱلۡحَقِّۚ أُوْلَٰٓئِكَ لَهُمۡ عَذَابٌ أَلِيمٞ ٤٢

43. ಯಾರಾದರೂ ತಾಳ್ಮೆ ವಹಿಸಿದರೆ ಮತ್ತು ಕ್ಷಮಿಸಿದರೆ ನಿಶ್ಚಯವಾಗಿಯೂ ಅದು ಮಹಾ ಸ್ಥೈರ್ಯದ ವಿಷಯಗಳಲ್ಲಿ ಸೇರಿದ್ದಾಗಿದೆ.

وَلَمَن صَبَرَ وَغَفَرَ إِنَّ ذَٰلِكَ لَمِنۡ عَزۡمِ ٱلۡأُمُورِ ٤٣

---

[1] ದೌರ್ಜನ್ಯಕ್ಕೆ ಗುರಿಯಾದವರು ಪ್ರತೀಕಾರ ಪಡೆಯುವುದಕ್ಕೆ ಅನುಮತಿಯಿದೆ. ಆದರೆ ಅದು ನ್ಯಾಯಯುತವಾಗಿರಬೇಕು. ಪ್ರತೀಕಾರ ಪಡೆಯದೆ ಕ್ಷಮಿಸಿ ಬಿಟ್ಟುಬಿಡುವುದಾದರೆ ಅದು ಶ್ರೇಷ್ಠವಾಗಿದೆ.

44. ಅಲ್ಲಾಹು ಯಾರನ್ನಾದರೂ ದಾರಿತಪ್ಪಿಸಿದರೆ, ನಂತರ ಅವನಿಗೆ ಯಾವುದೇ ರಕ್ಷಕನಿರುವುದಿಲ್ಲ. ಅಕ್ರಮಿಗಳು ಶಿಕ್ಷೆಯನ್ನು ನೇರವಾಗಿ ನೋಡುವಾಗ ಮರಳಿ (ಭೂಮಿಗೆ) ಹೋಗಲು ಯಾವುದಾದರೂ ದಾರಿಯಿದೆಯೇ ಎಂದು ಕೇಳುವುದನ್ನು ನಿಮಗೆ ಕಾಣಬಹುದು.

وَمَن يُضْلِلِ ٱللَّهُ فَمَا لَهُۥ مِن وَلِيٍّ مِّنۢ بَعْدِهِۦ ۗ وَتَرَى ٱلظَّٰلِمِينَ لَمَّا رَأَوُا۟ ٱلْعَذَابَ يَقُولُونَ هَلْ إِلَىٰ مَرَدٍّ مِّن سَبِيلٍ ٤٤

45. ಅವಮಾನದಿಂದ ಶರಣಾಗತರಾದ ಸ್ಥಿತಿಯಲ್ಲಿ ಅವರನ್ನು ಅದರ (ನರಕಾಗ್ನಿಯ) ಮುಂದೆ ಪ್ರದರ್ಶಿಸಲಾಗುವುದನ್ನು ನೀವು ನೋಡುವಿರಿ. ಅವರು ಕುಡಿನೋಟದಿಂದ ನೋಡುತ್ತಿರುವರು. ಸತ್ಯವಿಶ್ವಾಸಿಗಳು ಹೇಳುವರು: "ಪುನರುತ್ಥಾನ ದಿನದಂದು ಯಾರು ತಮ್ಮನ್ನು ಮತ್ತು ತಮ್ಮ ಸಂಬಂಧಿಕರನ್ನು ಕಳೆದು-ಕೊಳ್ಳುತ್ತಾರೋ ಅವರೇ ನಷ್ಟ ಹೊಂದಿದವರು. ತಿಳಿಯಿರಿ! ನಿಶ್ಚಯವಾಗಿಯೂ ಅಕ್ರಮಿಗಳು ಶಾಶ್ವತ ಶಿಕ್ಷೆಯಲ್ಲಿದ್ದಾರೆ."

وَتَرَىٰهُمْ يُعْرَضُونَ عَلَيْهَا خَٰشِعِينَ مِنَ ٱلذُّلِّ يَنظُرُونَ مِن طَرْفٍ خَفِىٍّ ۗ وَقَالَ ٱلَّذِينَ ءَامَنُوٓا۟ إِنَّ ٱلْخَٰسِرِينَ ٱلَّذِينَ خَسِرُوٓا۟ أَنفُسَهُمْ وَأَهْلِيهِمْ يَوْمَ ٱلْقِيَٰمَةِ ۗ أَلَآ إِنَّ ٱلظَّٰلِمِينَ فِى عَذَابٍ مُّقِيمٍ ٤٥

46. ಅಲ್ಲಾಹನ ಹೊರತು ಅವರಿಗೆ ಸಹಾಯ ಮಾಡುವ ಬೇರೆ ಯಾವ ರಕ್ಷಕರೂ ಅವರಿಗಿಲ್ಲ. ಅಲ್ಲಾಹು ಯಾರನ್ನು ದಾರಿತಪ್ಪಿಸು-ತ್ತಾನೋ ಅವನಿಗೆ ಯಾವುದೇ ದಾರಿಯಿಲ್ಲ.

وَمَا كَانَ لَهُم مِّنْ أَوْلِيَآءَ يَنصُرُونَهُم مِّن دُونِ ٱللَّهِ ۗ وَمَن يُضْلِلِ ٱللَّهُ فَمَا لَهُۥ مِن سَبِيلٍ ٤٦

47. ಅಲ್ಲಾಹನ ಕಡೆಯ ಒಂದು ದಿನವು ಬರುವುದಕ್ಕೆ ಮೊದಲೇ ನಿಮ್ಮ ಪರಿಪಾಲಕನ (ಅಲ್ಲಾಹನ) ಕರೆಗೆ ಉತ್ತರ ನೀಡಿರಿ. ಆ ದಿನವನ್ನು ದೂರೀಕರಿಸಲು ಯಾರಿಗೂ ಸಾಧ್ಯವಿಲ್ಲ. ಅಂದು ನಿಮಗೆ ಯಾವುದೇ ಆಶ್ರಯತಾಣವಿಲ್ಲ ಮತ್ತು ಅಡಗಿ ಕುಳಿತು ಅಜ್ಞಾತರಾಗಲೂ ನಿಮಗೆ ಸಾಧ್ಯವಿಲ್ಲ.

ٱسْتَجِيبُوا۟ لِرَبِّكُم مِّن قَبْلِ أَن يَأْتِىَ يَوْمٌ لَّا مَرَدَّ لَهُۥ مِنَ ٱللَّهِ ۚ مَا لَكُم مِّن مَّلْجَإٍ يَوْمَئِذٍ وَمَا لَكُم مِّن نَّكِيرٍ ٤٧

48. ಅವರೇನಾದರೂ ವಿಮುಖರಾದರೆ ನಾವು ನಿಮ್ಮನ್ನು ಅವರ ಮೇಲೆ ಕಾವಲುಗಾರರಾಗಿ ಕಳುಹಿಸಿಲ್ಲ. ನಿಮ್ಮ ಕರ್ತವ್ಯವು ಸಂದೇಶವನ್ನು ತಲುಪಿಸುವುದು ಮಾತ್ರವಾಗಿದೆ. ನಿಶ್ಚಯವಾಗಿಯೂ ನಾವು ಮನುಷ್ಯನಿಗೆ ನಮ್ಮ ಕಡೆಯ ದಯೆಯ ರುಚಿಯನ್ನು ತೋರಿಸಿದರೆ ಅವನು ಸಂತೋಷಪಡುತ್ತಾನೆ. ಅವರ ಕೈಗಳು ಮುಂದಕ್ಕೆ ಕಳುಹಿಸಿರುವ ಕರ್ಮಗಳ ಪ್ರತಿಫಲವಾಗಿ ಅವರಿಗೆ ಏನಾದರೂ ವಿಪತ್ತು ಸಂಭವಿಸಿದರೆ ನಿಶ್ಚಯವಾಗಿಯೂ ಮನುಷ್ಯನು ಕೃತಘ್ನನಾಗಿ ಬಿಡುತ್ತಾನೆ.

فَإِنْ أَعْرَضُوا۟ فَمَآ أَرْسَلْنَٰكَ عَلَيْهِمْ حَفِيظًا ۖ إِنْ عَلَيْكَ إِلَّا ٱلْبَلَٰغُ ۗ وَإِنَّآ إِذَآ أَذَقْنَا ٱلْإِنسَٰنَ مِنَّا رَحْمَةً فَرِحَ بِهَا ۖ وَإِن تُصِبْهُمْ سَيِّئَةٌۢ بِمَا قَدَّمَتْ أَيْدِيهِمْ فَإِنَّ ٱلْإِنسَٰنَ كَفُورٌ ٤٨

49. ಭೂಮ್ಯಾಕಾಶಗಳ ಸಾರ್ವಭೌಮತ್ವವು ಅಲ್ಲಾಹನಿಗೆ ಸೇರಿದ್ದು. ಅವನು ಇಚ್ಛಿಸುವುದನ್ನು ಅವನು ಸೃಷ್ಟಿಸುತ್ತಾನೆ. ಅವನು ಇಚ್ಛಿಸುವವರಿಗೆ ಹೆಣ್ಣು ಮಕ್ಕಳನ್ನು ಕರುಣಿಸುತ್ತಾನೆ ಮತ್ತು ಅವನು ಇಚ್ಛಿಸುವವರಿಗೆ ಗಂಡು ಮಕ್ಕಳನ್ನು ಕರುಣಿಸುತ್ತಾನೆ.

لِّلَّهِ مُلْكُ ٱلسَّمَٰوَٰتِ وَٱلْأَرْضِ ۚ يَخْلُقُ مَا يَشَآءُ ۚ يَهَبُ لِمَن يَشَآءُ إِنَٰثًا وَيَهَبُ لِمَن يَشَآءُ ٱلذُّكُورَ ٤٩

50. ಅಥವಾ ಅವರಿಗೆ ಗಂಡು ಮತ್ತು ಹೆಣ್ಣು ಮಕ್ಕಳನ್ನು ಜೊತೆಯಾಗಿ ಕರುಣಿಸುತ್ತಾನೆ. ಅವನು ಇಚ್ಛಿಸುವವರನ್ನು ಬಂಜೆಯಾಗಿ ಮಾಡುತ್ತಾನೆ. ನಿಶ್ಚಯವಾಗಿಯೂ ಅವನು ಸರ್ವಜ್ಞನು ಮತ್ತು ಸರ್ವಶಕ್ತನಾಗಿದ್ದಾನೆ.

أَوۡ يُزَوِّجُهُمۡ ذُكۡرَانٗا وَإِنَٰثٗاۖ وَيَجۡعَلُ مَن يَشَآءُ عَقِيمًاۚ إِنَّهُۥ عَلِيمٞ قَدِيرٞ ﴿٥٠﴾

51. ಅಲ್ಲಾಹು ಒಬ್ಬ ಮನುಷ್ಯನೊಡನೆ ನೇರವಾಗಿ ಮಾತನಾಡುವುದು ಅಸಂಭವ್ಯವಾಗಿದೆ. ದೇವವಾಣಿಯ ಮೂಲಕ, ಅಥವಾ ಒಂದು ಪರದೆಯ ಹಿಂದಿನಿಂದ, ಅಥವಾ ಒಬ್ಬ ದೇವದೂತನನ್ನು ಕಳುಹಿಸಿ, ಆ ದೇವದೂತನು ಅಲ್ಲಾಹನ ಆಜ್ಞೆಯಂತೆ ಅಲ್ಲಾಹು ಇಚ್ಛಿಸುವುದನ್ನು ಸಂದೇಶವಾಗಿ ನೀಡುವ ಹೊರತು. ನಿಶ್ಚಯವಾಗಿಯೂ ಅಲ್ಲಾಹು ಅತ್ಯುನ್ನತನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَمَا كَانَ لِبَشَرٍ أَن يُكَلِّمَهُ ٱللَّهُ إِلَّا وَحۡيًا أَوۡ مِن وَرَآيِٕ حِجَابٍ أَوۡ يُرۡسِلَ رَسُولٗا فَيُوحِيَ بِإِذۡنِهِۦ مَا يَشَآءُۚ إِنَّهُۥ عَلِيٌّ حَكِيمٞ ﴿٥١﴾

52. ಈ ರೀತಿ ನಾವು ನಮ್ಮ ಆಜ್ಞೆಯಿಂದ ನಿಮಗೆ ಒಂದು ಆತ್ಮವನ್ನು (ಕುರ್‌ಆನನ್ನು) ಇಳಿಸಿಕೊಟ್ಟಿದ್ದೇವೆ. ಗ್ರಂಥವೆಂದರೆ ಏನು ಮತ್ತು ಸತ್ಯವಿಶ್ವಾಸವೆಂದರೆ ಏನು ಮುಂತಾದ ಯಾವುದೂ ನಿಮಗೆ ತಿಳಿದಿರಲಿಲ್ಲ. ಆದರೆ ನಾವು ಅದನ್ನು ಒಂದು ಬೆಳಕಿನಂತೆ ಮಾಡಿದೆವು. ಅದರ ಮೂಲಕ ನಮ್ಮ ದಾಸರಲ್ಲಿ ನಾವು ಇಚ್ಛಿಸಿದವರಿಗೆ ನಾವು ಸನ್ಮಾರ್ಗವನ್ನು ತೋರಿಸುತ್ತೇವೆ. ನಿಶ್ಚಯವಾಗಿಯೂ ನೀವು ನೇರವಾದ ಮಾರ್ಗಕ್ಕೆ ಮಾರ್ಗದರ್ಶನ ಮಾಡುತ್ತಿದ್ದೀರಿ.

وَكَذَٰلِكَ أَوۡحَيۡنَآ إِلَيۡكَ رُوحٗا مِّنۡ أَمۡرِنَاۚ مَا كُنتَ تَدۡرِي مَا ٱلۡكِتَٰبُ وَلَا ٱلۡإِيمَٰنُ وَلَٰكِن جَعَلۡنَٰهُ نُورٗا نَّهۡدِي بِهِۦ مَن نَّشَآءُ مِنۡ عِبَادِنَاۚ وَإِنَّكَ لَتَهۡدِيٓ إِلَىٰ صِرَٰطٖ مُّسۡتَقِيمٖ ﴿٥٢﴾

53. ಭೂಮ್ಯಾಕಾಶಗಳಲ್ಲಿರುವುದು ಯಾರದ್ದೋ ಆ ಅಲ್ಲಾಹನ ಮಾರ್ಗಕ್ಕೆ. ತಿಳಿಯಿರಿ! ಎಲ್ಲಾ ವಿಷಯಗಳೂ ಅಲ್ಲಾಹನ ಬಳಿಗೇ ಮರಳುತ್ತವೆ.

صِرَٰطِ ٱللَّهِ ٱلَّذِي لَهُۥ مَا فِي ٱلسَّمَٰوَٰتِ وَمَا فِي ٱلۡأَرۡضِۗ أَلَآ إِلَى ٱللَّهِ تَصِيرُ ٱلۡأُمُورُ ﴿٥٣﴾

# 43. ಅಝ್ಝುಖ್ರುಫ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ಹಾ-ಮೀಮ್. | حمٓ ١ |
| 2. | ಸ್ಪಷ್ಟ ಗ್ರಂಥದ ಮೇಲಾಣೆ! | وَٱلۡكِتَٰبِ ٱلۡمُبِينِ ٢ |
| 3. | ನಿಶ್ಚಯವಾಗಿಯೂ ನಾವು ಇದನ್ನು ಅರಬೀ ಭಾಷೆಯಲ್ಲಿರುವ ಕುರ್‌ಆನ್ ಆಗಿ ಮಾಡಿದ್ದೇವೆ. ನೀವು ಅರ್ಥಮಾಡಿಕೊಳ್ಳುವುದಕ್ಕಾಗಿ. | إِنَّا جَعَلۡنَٰهُ قُرۡءَٰنًا عَرَبِيّٗا لَّعَلَّكُمۡ تَعۡقِلُونَ ٣ |
| 4. | ನಿಶ್ಚಯವಾಗಿಯೂ ಅದು ನಮ್ಮ ಬಳಿ ಮೂಲಗ್ರಂಥದ-ಲ್ಲಿದೆ (ಲೌಹುಲ್ ಮಹ್ಫೂಝ್‌ನಲ್ಲಿದೆ). ಅದು ಅತ್ಯುನ್ನತ ಮತ್ತು ವಿವೇಕಭರಿತವಾಗಿದೆ. | وَإِنَّهُۥ فِيٓ أُمِّ ٱلۡكِتَٰبِ لَدَيۡنَا لَعَلِيٌّ حَكِيمٌ ٤ |
| 5. | ನೀವು ಎಲ್ಲೆ ಮೀರಿದ ಜನರಾಗಿದ್ದೀರಿ ಎಂಬ ಕಾರಣದಿಂದ ಈ ಉಪದೇಶವನ್ನು ನಾವು ನಿಮ್ಮಿಂದ ದೂರ ಸರಿಸುವೆವೇ? | أَفَنَضۡرِبُ عَنكُمُ ٱلذِّكۡرَ صَفۡحًا أَن كُنتُمۡ قَوۡمٗا مُّسۡرِفِينَ ٥ |
| 6. | ನಾವು ಪೂರ್ವಿಕ ಸಮುದಾಯಗಳಲ್ಲಿ ಎಷ್ಟೋ ಪ್ರವಾದಿಗಳನ್ನು ಕಳುಹಿಸಿದ್ದೇವೆ. | وَكَمۡ أَرۡسَلۡنَا مِن نَّبِيّٖ فِي ٱلۡأَوَّلِينَ ٦ |
| 7. | ಯಾವುದೇ ಒಬ್ಬ ಪ್ರವಾದಿ ಅವರ ಬಳಿ ಬರುವಾಗಲೆಲ್ಲಾ ಅವರು ಆ ಪ್ರವಾದಿಯನ್ನು ತಮಾಷೆ ಮಾಡುತ್ತಿದ್ದರು. | وَمَا يَأۡتِيهِم مِّن نَّبِيٍّ إِلَّا كَانُواْ بِهِۦ يَسۡتَهۡزِءُونَ ٧ |
| 8. | ಇವರಿಗಿಂತಲೂ ಶಕ್ತಿಶಾಲಿಗಳನ್ನು ನಾವು ನಾಶ ಮಾಡಿದ್ದೇವೆ. ಪೂರ್ವಿಕರ ಉದಾಹರಣೆಗಳು ಈಗಾಗಲೇ ಗತಿಸಿಹೋಗಿವೆ. | فَأَهۡلَكۡنَآ أَشَدَّ مِنۡهُم بَطۡشٗا وَمَضَىٰ مَثَلُ ٱلۡأَوَّلِينَ ٨ |
| 9. | "ಭೂಮ್ಯಾಕಾಶಗಳನ್ನು ಸೃಷ್ಟಿಸಿದ್ದು ಯಾರು?" ಎಂದು ನೀವು ಅವರೊಡನೆ ಕೇಳಿದರೆ, "ಅವುಗಳನ್ನು ಸೃಷ್ಟಿಸಿದ್ದು ಪ್ರಬಲನು ಮತ್ತು ಸರ್ವಜ್ಞನಾದ ಅಲ್ಲಾಹು" ಎಂದು ಅವರು ಖಂಡಿತವಾಗಿಯೂ ಉತ್ತರಿಸುವರು. | وَلَئِن سَأَلۡتَهُم مَّنۡ خَلَقَ ٱلسَّمَٰوَٰتِ وَٱلۡأَرۡضَ لَيَقُولُنَّ خَلَقَهُنَّ ٱلۡعَزِيزُ ٱلۡعَلِيمُ ٩ |
| 10. | ಅವನು ಯಾರೆಂದರೆ, ನಿಮಗೆ ಭೂಮಿಯನ್ನು ಒಂದು ಹಾಸನ್ನಾಗಿ ಮಾಡಿಕೊಟ್ಟವನು ಮತ್ತು ಅದರಲ್ಲಿ ನೀವು ದಾರಿ ಕಂಡುಕೊಳ್ಳು-ವುದಕ್ಕಾಗಿ ಮಾರ್ಗಗಳನ್ನು ಮಾಡಿಕೊಟ್ಟವನು. | ٱلَّذِي جَعَلَ لَكُمُ ٱلۡأَرۡضَ مَهۡدٗا وَجَعَلَ لَكُمۡ فِيهَا سُبُلٗا لَّعَلَّكُمۡ تَهۡتَدُونَ ١٠ |
| 11. | ಒಂದು ನಿರ್ಣಯಕ್ಕೆ ಅನುಗುಣವಾಗಿ ಆಕಾಶದಿಂದ ಮಳೆಯನ್ನು ಸುರಿಸಿಕೊಟ್ಟವನು. ನಂತರ ನಾವು ಅದರ ಮೂಲಕ ನಿರ್ಜೀವ ಪ್ರದೇಶವನ್ನು ಜೀವಂತಗೊಳಿಸಿದೆವು. ಇದೇ ರೀತಿ ನಿಮ್ಮನ್ನು | وَٱلَّذِي نَزَّلَ مِنَ ٱلسَّمَآءِ مَآءَۢ بِقَدَرٖ فَأَنشَرۡنَا بِهِۦ بَلۡدَةٗ مَّيۡتٗاۚ كَذَٰلِكَ تُخۡرَجُونَ ١١ |

ಹೊರತರಲಾಗುವುದು.

---

12. ಎಲ್ಲಾ ವಸ್ತುಗಳಲ್ಲೂ ಜೋಡಿಗಳನ್ನು ಸೃಷ್ಟಿಸಿದವನು ಮತ್ತು ನಿಮಗೆ ಸವಾರಿ ಮಾಡಲು ನಾವೆಗಳನ್ನು ಹಾಗೂ ಜಾನುವಾರುಗಳನ್ನು ಮಾಡಿಕೊಟ್ಟವನು.

وَٱلَّذِي خَلَقَ ٱلۡأَزۡوَٰجَ كُلَّهَا وَجَعَلَ لَكُم مِّنَ ٱلۡفُلۡكِ وَٱلۡأَنۡعَٰمِ مَا تَرۡكَبُونَ ١٢

---

13. ನೀವು ಅವುಗಳ ಬೆನ್ನ ಮೇಲೆ ಆರೂಢರಾಗಿ, ನಂತರ ನೀವು ಅದರ ಮೇಲೆ ಆರೂಢರಾಗುವಾಗ ನಿಮ್ಮ ಪರಿಪಾಲಕನ (ಅಲ್ಲಾಹನ) ಅನುಗ್ರಹವನ್ನು ನೆನೆದು ಈ ರೀತಿ ಹೇಳುವುದಕ್ಕಾಗಿ: “ಇದನ್ನು ನಮಗೆ ವಿಧೇಯಗೊಳಿಸಿಕೊಟ್ಟವನು ಪರಮ ಪರಿಶುದ್ಧನು! ಇದನ್ನು ನಿಯಂತ್ರಿಸಲು ನಮಗೆ ಸಾಧ್ಯವಿರಲಿಲ್ಲ.

لِتَسۡتَوُۥاْ عَلَىٰ ظُهُورِهِۦ ثُمَّ تَذۡكُرُواْ نِعۡمَةَ رَبِّكُمۡ إِذَا ٱسۡتَوَيۡتُمۡ عَلَيۡهِ وَتَقُولُواْ سُبۡحَٰنَ ٱلَّذِي سَخَّرَ لَنَا هَٰذَا وَمَا كُنَّا لَهُۥ مُقۡرِنِينَ ١٣

---

14. ನಿಶ್ಚಯವಾಗಿಯೂ ನಾವು ನಮ್ಮ ಪರಿಪಾಲಕನ (ಅಲ್ಲಾಹನ) ಬಳಿಗೆ ಮರಳಿ ಹೋಗುವವರಾಗಿದ್ದೇವೆ.”

وَإِنَّآ إِلَىٰ رَبِّنَا لَمُنقَلِبُونَ ١٤

---

15. ಅವರು ಅಲ್ಲಾಹನ ಕೆಲವು ದಾಸರನ್ನು ಅವನ ಒಂದು ಭಾಗವಾಗಿ ಮಾಡಿಕೊಂಡರು. ನಿಶ್ಚಯವಾಗಿಯೂ ಮನುಷ್ಯನು ಅಕ್ಷರಶಃ ಕೃತಘ್ನನಾಗಿದ್ದಾನೆ.

وَجَعَلُواْ لَهُۥ مِنۡ عِبَادِهِۦ جُزۡءًاۚ إِنَّ ٱلۡإِنسَٰنَ لَكَفُورٞ مُّبِينٌ ١٥

---

16. ಅಲ್ಲಾಹು ಅವನ ಸೃಷ್ಟಿಗಳಲ್ಲಿ ಸೇರಿದ ಹೆಣ್ಣುಮಕ್ಕಳನ್ನು ತನಗಿಟ್ಟು ನಿಮಗೆ ಗಂಡುಮಕ್ಕಳನ್ನು ದಯಪಾಲಿಸಿದನೇ?

أَمِ ٱتَّخَذَ مِمَّا يَخۡلُقُ بَنَاتٖ وَأَصۡفَىٰكُم بِٱلۡبَنِينَ ١٦

---

17. (ವಾಸ್ತವವಾಗಿ) ಅವರು ಪರಮ ದಯಾಳುವಾದ ಅಲ್ಲಾಹನಿಗೆ ಉದಾಹರಣೆ ಕೊಡುತ್ತಿದ್ದ (ಹೆಣ್ಣು ಮಗುವಿನ ಜನನದ) ಬಗ್ಗೆ ಅವರಲ್ಲೊಬ್ಬನಿಗೆ ಶುಭಸುದ್ದಿ ನೀಡಲಾದರೆ, ಅವನ ಮುಖವು ಕರ್ರಗಾಗುತ್ತದೆ ಮತ್ತು ಅವನು ಬಹಳ ದುಃಖಿತನಾಗುತ್ತಾನೆ.[1]

وَإِذَا بُشِّرَ أَحَدُهُم بِمَا ضَرَبَ لِلرَّحۡمَٰنِ مَثَلٗا ظَلَّ وَجۡهُهُۥ مُسۡوَدّٗا وَهُوَ كَظِيمٌ ١٧

---

18. ಆಭರಣಗಳನ್ನು ತೊಟ್ಟು ಬೆಳೆಯುವ ಮತ್ತು ತರ್ಕಿಸುವಾಗ ವಾದವನ್ನು ಸ್ಪಷ್ಟವಾಗಿ ಮುಂದಿಡಲು ಸಾಧ್ಯವಾಗದ (ಹೆಣ್ಣುಮಕ್ಕ-ಳನ್ನು ಅವರು ಅಲ್ಲಾಹನಿಗೆ ಮಕ್ಕಳನ್ನಾಗಿ ಮಾಡಿದ್ದಾರೆಯೇ)?

أَوَمَن يُنَشَّؤُاْ فِي ٱلۡحِلۡيَةِ وَهُوَ فِي ٱلۡخِصَامِ غَيۡرُ مُبِينٖ ١٨

---

19. ಪರಮ ದಯಾಮಯನ (ಅಲ್ಲಾಹನ) ದಾಸರಾದ ದೇವದೂ-ತರುಗಳನ್ನು ಅವರು ಮಹಿಳೆಯರಾಗಿ ಮಾಡಿದ್ದಾರೆ. ಅವರನ್ನು (ದೇವದೂತರುಗಳನ್ನು) ಸೃಷ್ಟಿಸುವಾಗ ಇವರು ಉಪಸ್ಥಿತರಿದ್ದರೇ? ಅವರ ಸಾಕ್ಷ್ಯವನ್ನು ಬರೆದಿಡಲಾಗುವುದು ಮತ್ತು ಅವರಲ್ಲಿ (ಅದರ ಬಗ್ಗೆ) ವಿಚಾರಿಸಲಾಗುವುದು.

وَجَعَلُواْ ٱلۡمَلَٰٓئِكَةَ ٱلَّذِينَ هُمۡ عِبَٰدُ ٱلرَّحۡمَٰنِ إِنَٰثًاۚ أَشَهِدُواْ خَلۡقَهُمۡۚ سَتُكۡتَبُ شَهَٰدَتُهُمۡ وَيُسۡـَٔلُونَ ١٩

---

[1] ಅರೇಬಿಯನ್ ಬಹುದೇವವಿಶ್ವಾಸಿಗಳು ಅಲ್ಲಾಹನಿಗೆ ಹೆಣ್ಣು ಮಕ್ಕಳಿದ್ದಾರೆಂದು ಆರೋಪಿಸುತ್ತಿದ್ದರು. ಆದರೆ ಅವರಿಗೆ ಹೆಣ್ಣು ಮಗುವಿನ ಜನನವಾದರೆ ಅವರ ಮುಖ ಕರ್ರಗಾಗುತ್ತಿತ್ತು ಮತ್ತು ಆ ಅವಮಾನವನ್ನು ಸಹಿಸಲಾಗದೆ ಅವರು ಆ ಮಗುವನ್ನು ಜೀವಂತ ದಫನ ಮಾಡುತ್ತಿದ್ದರು.

20. ಅವರು ಹೇಳಿದರು: “ಪರಮ ದಯಾಮಯನು (ಅಲ್ಲಾಹು) ಇಚ್ಛಿಸುತ್ತಿದ್ದರೆ ನಾವು ಅವರನ್ನು (ದೇವದೂತರುಗಳನ್ನು) ಆರಾಧಿಸುತ್ತಿರಲಿಲ್ಲ.” ಅವರಿಗೆ ಅದರ ಬಗ್ಗೆ ಯಾವುದೇ ತಿಳುವಳಿಕೆಯಿಲ್ಲ. ಅವರು ಕೇವಲ ಊಹಿಸಿ ಹೇಳುತ್ತಿದ್ದಾರೆ.

وَقَالُواْ لَوۡ شَآءَ ٱلرَّحۡمَٰنُ مَا عَبَدۡنَٰهُمۗ مَّا لَهُم بِذَٰلِكَ مِنۡ عِلۡمٍۖ إِنۡ هُمۡ إِلَّا يَخۡرُصُونَ ٢٠

21. ನಾವು ಇದಕ್ಕೆ ಮೊದಲು ಅವರಿಗೆ ಯಾವುದಾದರೂ ಗ್ರಂಥವನ್ನು ನೀಡಿದ್ದು ಅವರು ಅದನ್ನು ಬಿಗಿಯಾಗಿ ಹಿಡಿದುಕೊಂಡಿದ್ದಾರೆಯೇ?

أَمۡ ءَاتَيۡنَٰهُمۡ كِتَٰبٗا مِّن قَبۡلِهِۦ فَهُم بِهِۦ مُسۡتَمۡسِكُونَ ٢١

22. ಅಲ್ಲ, ಅವರು ಹೇಳಿದರು: “ನಮ್ಮ ಪೂರ್ವಜರು ಒಂದು ಮಾರ್ಗದಲ್ಲಿರುವುದನ್ನು ನಾವು ಕಂಡಿದ್ದೇವೆ. ನಿಶ್ಚಯವಾಗಿಯೂ ನಾವು ಅವರ ಹೆಜ್ಜೆಗುರುತುಗಳಲ್ಲೇ ಸನ್ಮಾರ್ಗವನ್ನು ಪಡೆಯುತ್ತೇವೆ.”

بَلۡ قَالُوٓاْ إِنَّا وَجَدۡنَآ ءَابَآءَنَا عَلَىٰٓ أُمَّةٖ وَإِنَّا عَلَىٰٓ ءَاثَٰرِهِم مُّهۡتَدُونَ ٢٢

23. ಈ ರೀತಿ ನಿಮಗಿಂತ ಮೊದಲು ಯಾವುದೇ ಪ್ರದೇಶಕ್ಕೆ ನಾವು ಮುನ್ನೆಚ್ಚರಿಕೆಗಾರರನ್ನು (ಪ್ರವಾದಿಗಳನ್ನು) ಕಳುಹಿಸಿದಾಗಲೆಲ್ಲಾ ಅಲ್ಲಿನ ಸಂಪನ್ನರು, “ನಮ್ಮ ಪೂರ್ವಜರು ಒಂದು ಮಾರ್ಗದಲ್ಲಿರುವುದನ್ನು ನಾವು ಕಂಡಿದ್ದೇವೆ. ನಿಶ್ಚಯವಾಗಿಯೂ ನಾವು ಅವರ ಹೆಜ್ಜೆಗುರುತುಗಳನ್ನೇ ಹಿಂಬಾಲಿಸುತ್ತೇವೆ” ಎಂದು ಹೇಳದಿರಲಿಲ್ಲ.

وَكَذَٰلِكَ مَآ أَرۡسَلۡنَا مِن قَبۡلِكَ فِي قَرۡيَةٖ مِّن نَّذِيرٍ إِلَّا قَالَ مُتۡرَفُوهَآ إِنَّا وَجَدۡنَآ ءَابَآءَنَا عَلَىٰٓ أُمَّةٖ وَإِنَّا عَلَىٰٓ ءَاثَٰرِهِم مُّقۡتَدُونَ ٢٣

24. ಅವರು (ಪ್ರವಾದಿಗಳು) ಹೇಳಿದರು: “ನಿಮ್ಮ ಪೂರ್ವಜರು ಯಾವ ಮಾರ್ಗದಲ್ಲಿರುವುದನ್ನು ನೀವು ಕಂಡಿದ್ದೀರೋ ಅದಕ್ಕಿಂತಲೂ ಉತ್ತಮವಾದ ಮಾರ್ಗವನ್ನು ತೋರಿಸಿಕೊಡುವ ಸಂದೇಶದೊಂದಿಗೆ ನಾವು ನಿಮ್ಮ ಬಳಿಗೆ ಬಂದರೂ (ನೀವು ಅವರನ್ನೇ ಹಿಂಬಾಲಿಸುವಿರಾ)?” ಅವರು ಹೇಳಿದರು: “ಯಾವ ಸಂದೇಶದೊಂದಿಗೆ ನಿಮ್ಮನ್ನು ಕಳುಹಿಸಲಾಗಿದೆಯೋ ಅದನ್ನು ನಾವು ಖಂಡಿತ ನಿಷೇಧಿಸುತ್ತೇವೆ.”

قَٰلَ أَوَلَوۡ جِئۡتُكُم بِأَهۡدَىٰ مِمَّا وَجَدتُّمۡ عَلَيۡهِ ءَابَآءَكُمۡۖ قَالُوٓاْ إِنَّا بِمَآ أُرۡسِلۡتُم بِهِۦ كَٰفِرُونَ ٢٤

25. ಆದ್ದರಿಂದ ನಾವು ಅವರಿಂದ ಪ್ರತೀಕಾರ ಪಡೆದೆವು. ಆ ನಿಷೇಧಿಗಳ ಅಂತ್ಯ ಹೇಗಿತ್ತೆಂದು ನೋಡಿರಿ.

فَٱنتَقَمۡنَا مِنۡهُمۡۖ فَٱنظُرۡ كَيۡفَ كَانَ عَٰقِبَةُ ٱلۡمُكَذِّبِينَ ٢٥

26. ಇಬ್ರಾಹೀಮ್ ತಮ್ಮ ತಂದೆ ಹಾಗೂ ಊರಿನ ಜನರೊಡನೆ ಹೇಳಿದ ಸಂದರ್ಭ: “ನಿಶ್ಚಯವಾಗಿಯೂ ನೀವು ಆರಾಧಿಸುತ್ತಿರುವ ದೇವರುಗಳಿಂದ ನಾನು ಸಂಪೂರ್ಣ ದೂರವಾಗಿದ್ದೇನೆ.

وَإِذۡ قَالَ إِبۡرَٰهِيمُ لِأَبِيهِ وَقَوۡمِهِۦٓ إِنَّنِي بَرَآءٞ مِّمَّا تَعۡبُدُونَ ٢٦

27. ನನ್ನನ್ನು ಸೃಷ್ಟಿಸಿದವನ ಹೊರತು. ನಿಶ್ಚಯವಾಗಿಯೂ ಅವನು ನನಗೆ ಸನ್ಮಾರ್ಗವನ್ನು ತೋರಿಸುತ್ತಾನೆ.”

إِلَّا ٱلَّذِي فَطَرَنِي فَإِنَّهُۥ سَيَهۡدِينِ ٢٧

28. ಇಬ್ರಾಹೀಮರು ಅದನ್ನು ತಮ್ಮ ಸಂತಾನಗಳಲ್ಲೂ ಅವಶೇಷಿಸುವ ಒಂದು ವಚನವಾಗಿ ಮಾಡಿದರು. ಜನರು (ಬಹುದೇವವಿಶ್ವಾಸದಿಂದ ಏಕದೇವವಿಶ್ವಾಸಕ್ಕೆ) ಮರಳುವುದಕ್ಕಾಗಿ.

وَجَعَلَهَا كَلِمَةَۢ بَاقِيَةً فِي عَقِبِهِۦ لَعَلَّهُمۡ يَرۡجِعُونَ ٢٨

29. ಅಲ್ಲ, ನಾನು ಅವರಿಗೆ ಮತ್ತು ಅವರ ಪೂರ್ವಜರಿಗೆ ಸವಲತ್ತುಗಳನ್ನು ನೀಡಿದೆನು. ಎಲ್ಲಿಯವರೆಗೆಂದರೆ ಸತ್ಯಸಂದೇಶ ಮತ್ತು ಅದನ್ನು ಸ್ಪಷ್ಟವಾಗಿ ವಿವರಿಸಿಕೊಡುವ ಒಬ್ಬ ಸಂದೇಶವಾಹಕರು ಅವರ ಬಳಿಗೆ ಬರುವವರೆಗೆ.

بَلۡ مَتَّعۡتُ هَٰٓؤُلَآءِ وَءَابَآءَهُمۡ حَتَّىٰ جَآءَهُمُ ٱلۡحَقُّ وَرَسُولٞ مُّبِينٞ ٢٩

30. ಸತ್ಯವು ಅವರ ಬಳಿಗೆ ಬಂದಾಗ ಅವರು ಹೇಳಿದರು: “ಇದು ಮಾಟಗಾರಿಕೆಯಾಗಿದೆ. ನಿಶ್ಚಯವಾಗಿಯೂ ನಾವು ಇದನ್ನು ನಿಷೇಧಿಸುತ್ತೇವೆ.”

وَلَمَّا جَآءَهُمُ ٱلۡحَقُّ قَالُواْ هَٰذَا سِحۡرٞ وَإِنَّا بِهِۦ كَٰفِرُونَ ٣٠

31. ಅವರು ಕೇಳಿದರು: “ಈ ಎರಡು ಊರುಗಳಲ್ಲಿರುವ (ಮಕ್ಕಾ ಮತ್ತು ತಾಯಿಫ್) ಯಾರಾದರೂ ಒಬ್ಬ ಮಹಾಪುರುಷನ ಮೇಲೆ ಈ ಕುರ್‌ಆನ್ ಏಕೆ ಅವತೀರ್ಣವಾಗಲಿಲ್ಲ?”

وَقَالُواْ لَوۡلَا نُزِّلَ هَٰذَا ٱلۡقُرۡءَانُ عَلَىٰ رَجُلٖ مِّنَ ٱلۡقَرۡيَتَيۡنِ عَظِيمٍ ٣١

32. ಇವರೇ ನಿಮ್ಮ ಪರಿಪಾಲಕನ (ಅಲ್ಲಾಹನ) ದಯೆಯನ್ನು ಪಾಲು ಮಾಡುವವರು? ಇಹಲೋಕದಲ್ಲಿ ನಾವೇ ಅವರ ಉಪಜೀವನವನ್ನು ಅವರ ನಡುವೆ ಹಂಚಿದ್ದೇವೆ. ಅವರಲ್ಲಿ ಒಬ್ಬರು ಇನ್ನೊಬ್ಬರನ್ನು ಕೆಳದರ್ಜೆಯವರನ್ನಾಗಿ ಮಾಡಿಕೊಳ್ಳಲು ನಾವು ಅವರಲ್ಲಿ ಕೆಲವರಿಗೆ ಇತರರಿಗಿಂತ ಉನ್ನತ ಸ್ಥಾನಮಾನವನ್ನು ನೀಡಿದ್ದೇವೆ. ಅವರು ಸಂಗ್ರಹಿಸಿಡುವ ಎಲ್ಲಾ ವಸ್ತುಗಳಿಗಿಂತಲೂ ನಿಮ್ಮ ಪರಿಪಾಲಕನ (ಅಲ್ಲಾಹನ) ದಯೆಯು ಶ್ರೇಷ್ಠವಾಗಿದೆ.

أَهُمۡ يَقۡسِمُونَ رَحۡمَتَ رَبِّكَۚ نَحۡنُ قَسَمۡنَا بَيۡنَهُم مَّعِيشَتَهُمۡ فِي ٱلۡحَيَوٰةِ ٱلدُّنۡيَاۚ وَرَفَعۡنَا بَعۡضَهُمۡ فَوۡقَ بَعۡضٖ دَرَجَٰتٖ لِّيَتَّخِذَ بَعۡضُهُم بَعۡضٗا سُخۡرِيّٗاۗ وَرَحۡمَتُ رَبِّكَ خَيۡرٞ مِّمَّا يَجۡمَعُونَ ٣٢

33. ಮನುಷ್ಯರೆಲ್ಲರೂ ಒಂದೇ (ಸತ್ಯನಿಷೇಧಿ) ಸಮುದಾಯವಾಗಿ ಮಾರ್ಪಡಲಾರರು ಎಂದಿದ್ದರೆ ಪರಮ ದಯಾಮಯನನ್ನು (ಅಲ್ಲಾಹನನ್ನು) ನಿಷೇಧಿಸುವವರ ಮನೆಗಳಿಗೆ ನಾವು ಬೆಳ್ಳಿಯ ಛಾವಣಿಗಳನ್ನು ಮತ್ತು ಮೇಲೇರಲು (ಬೆಳ್ಳಿಯ) ಮೆಟ್ಟಿಲುಗಳನ್ನು ನಿರ್ಮಿಸಿಕೊಡುತ್ತಿದ್ದೆವು.

وَلَوۡلَآ أَن يَكُونَ ٱلنَّاسُ أُمَّةٗ وَٰحِدَةٗ لَّجَعَلۡنَا لِمَن يَكۡفُرُ بِٱلرَّحۡمَٰنِ لِبُيُوتِهِمۡ سُقُفٗا مِّن فِضَّةٖ وَمَعَارِجَ عَلَيۡهَا يَظۡهَرُونَ ٣٣

34. ಅವರ ಮನೆಗಳಿಗೆ (ಬೆಳ್ಳಿಯ) ಬಾಗಿಲುಗಳನ್ನು ಮತ್ತು ಒರಗಿ ಕೂರಲು (ಬೆಳ್ಳಿಯ) ಮಂಚಗಳನ್ನು.

وَلِبُيُوتِهِمۡ أَبۡوَٰبٗا وَسُرُرًا عَلَيۡهَا يَتَّكِـُٔونَ ٣٤

35. ಮತ್ತು ಸ್ವರ್ಣಾಲಂಕಾರಗಳನ್ನು. ಆದರೆ ಅವೆಲ್ಲವೂ ಇಹಲೋಕ ಜೀವನದ ಸವಲತ್ತುಗಳಾಗಿವೆ. ಪರಲೋಕವು ನಿಮ್ಮ ಪರಿಪಾಲಕನ (ಅಲ್ಲಾಹನ) ಬಳಿ ದೇವಭಯವುಳ್ಳವರಿಗೆ ಮಾತ್ರವಾಗಿದೆ.

وَزُخۡرُفٗاۚ وَإِن كُلُّ ذَٰلِكَ لَمَّا مَتَٰعُ ٱلۡحَيَوٰةِ ٱلدُّنۡيَاۚ وَٱلۡأٓخِرَةُ عِندَ رَبِّكَ لِلۡمُتَّقِينَ ٣٥

36. ಯಾರು ಪರಮ ದಯಾಮಯನ (ಅಲ್ಲಾಹನ) ಸ್ಮರಣೆಯನ್ನು ನಿರ್ಲಕ್ಷಿಸುತ್ತಾನೋ ಅವನಿಗೆ ನಾವು ಒಬ್ಬ ಶೈತಾನನನ್ನು ನಿಶ್ಚಯಿಸುವೆವು. ಅವನು (ಶೈತಾನನು) ಅವನ ಸಂಗಡಿಗನಾಗುವನು.

وَمَن يَعْشُ عَن ذِكْرِ ٱلرَّحْمَٰنِ نُقَيِّضْ لَهُۥ
شَيْطَٰنًا فَهُوَ لَهُۥ قَرِينٌ ﴿٣٦﴾

37. ಅವರು (ಶೈತಾನರು) ಅವರನ್ನು ಸನ್ಮಾರ್ಗದಿಂದ ತಡೆಯುವರು. ನಿಶ್ಚಯವಾಗಿಯೂ ನಾವು ಸನ್ಮಾರ್ಗದಲ್ಲಿದ್ದೇವೆಂದೇ ಅವರು ಭಾವಿಸುವರು.

وَإِنَّهُمْ لَيَصُدُّونَهُمْ عَنِ ٱلسَّبِيلِ وَيَحْسَبُونَ
أَنَّهُم مُّهْتَدُونَ ﴿٣٧﴾

38. ಎಲ್ಲಿಯವರೆಗೆಂದರೆ, ಅವನು (ಮನುಷ್ಯನು) ನಮ್ಮ ಬಳಿಗೆ ತಲುಪುವಾಗ (ತನ್ನ ಸಂಗಡಿಗನಾದ ಶೈತಾನನೊಂದಿಗೆ) ಹೇಳುವನು: “ನನ್ನ ಮತ್ತು ನಿನ್ನ ನಡುವೆ ಪೂರ್ವ ಮತ್ತು ಪಶ್ಚಿಮದಷ್ಟು ಅಂತರವಿರುತ್ತಿದ್ದರೆ ಎಷ್ಟು ಚೆನ್ನಾಗಿತ್ತು!” ಆ ಸಂಗಡಿಗನು ಬಹಳ ನಿಕೃಷ್ಟನಾಗಿದ್ದಾನೆ!

حَتَّىٰٓ إِذَا جَآءَنَا قَالَ يَٰلَيْتَ بَيْنِى وَبَيْنَكَ بُعْدَ
ٱلْمَشْرِقَيْنِ فَبِئْسَ ٱلْقَرِينُ ﴿٣٨﴾

39. ನೀವು ಅಕ್ರಮಿಗಳಾಗಿದ್ದರೆ, ಇಂದು ನೀವೆಲ್ಲರೂ ಶಿಕ್ಷೆಯಲ್ಲಿ ಪಾಲುದಾರರಾಗಿದ್ದೀರಿ ಎನ್ನುವುದು ನಿಮಗೆ ಯಾವುದೇ ಉಪಕಾರ ಮಾಡುವುದಿಲ್ಲ.

وَلَن يَنفَعَكُمُ ٱلْيَوْمَ إِذ ظَّلَمْتُمْ أَنَّكُمْ فِى
ٱلْعَذَابِ مُشْتَرِكُونَ ﴿٣٩﴾

40. ಹಾಗಾದರೆ, ಕಿವುಡರಿಗೆ ಕೇಳುವಂತೆ ಮಾಡಲು ಮತ್ತು ಕುರುಡರಿಗೆ ಹಾಗೂ ಸ್ಪಷ್ಟ ದುರ್ಮಾರ್ಗದಲ್ಲಿರುವವರಿಗೆ ದಾರಿ ತೋರಿಸಿಕೊಡಲು ನಿಮ್ಮಿಂದ ಸಾಧ್ಯವೇ?

أَفَأَنتَ تُسْمِعُ ٱلصُّمَّ أَوْ تَهْدِى ٱلْعُمْىَ وَمَن كَانَ
فِى ضَلَٰلٍ مُّبِينٍ ﴿٤٠﴾

41. ನಾವು ನಿಮ್ಮನ್ನು ಇಲ್ಲಿಂದ ಕೊಂಡೊಯ್ಯುವುದಾದರೂ ಸಹ, ನಿಶ್ಚಯವಾಗಿಯೂ ನಾವು ಅವರಿಂದ ಪ್ರತೀಕಾರ ಪಡೆಯುವೆವು.

فَإِمَّا نَذْهَبَنَّ بِكَ فَإِنَّا مِنْهُم مُّنتَقِمُونَ ﴿٤١﴾

42. ಅಥವಾ ಅವರಿಗೆ ನಾವು ಎಚ್ಚರಿಕೆ ನೀಡಿದ ಶಿಕ್ಷೆಯನ್ನು ನಾವು ನಿಮಗೆ ತೋರಿಸಿಕೊಡುವುದಾದರೂ ನಮಗೆ ಅವರ ಮೇಲೆ ಸಂಪೂರ್ಣ ಸಾಮರ್ಥ್ಯವಿದೆ.

أَوْ نُرِيَنَّكَ ٱلَّذِى وَعَدْنَٰهُمْ فَإِنَّا عَلَيْهِم
مُّقْتَدِرُونَ ﴿٤٢﴾

43. ಆದ್ದರಿಂದ ನಿಮಗೆ ದೇವವಾಣಿಯ ಮೂಲಕ ನೀಡಲಾಗಿರುವುದನ್ನು ಬಿಗಿಯಾಗಿ ಹಿಡಿಯಿರಿ. ನಿಶ್ಚಯವಾಗಿಯೂ ನೀವು ನೇರಮಾರ್ಗಲ್ಲಿದ್ದೀರಿ.

فَٱسْتَمْسِكْ بِٱلَّذِىٓ أُوحِىَ إِلَيْكَ ۖ إِنَّكَ عَلَىٰ
صِرَٰطٍ مُّسْتَقِيمٍ ﴿٤٣﴾

44. ನಿಶ್ಚಯವಾಗಿಯೂ ಇದು ನಿಮಗೆ ಮತ್ತು ನಿಮ್ಮ ಜನರಿಗೆ ಒಂದು ಉಪದೇಶವಾಗಿದೆ. ಸದ್ಯವೇ ನಿಮ್ಮೊಡನೆ ಪ್ರಶ್ನಿಸಲಾಗುವುದು.

وَإِنَّهُۥ لَذِكْرٌ لَّكَ وَلِقَوْمِكَ ۖ وَسَوْفَ تُسْـَٔلُونَ ﴿٤٤﴾

45. ನಿಮಗಿಂತ ಮೊದಲು ನಾವು ಕಳುಹಿಸಿದ ನಮ್ಮ ಸಂದೇಶವಾಹಕರೊಡನೆ ಕೇಳಿ ನೋಡಿರಿ, “ಪರಮ ದಯಾಮಯನ (ಅಲ್ಲಾಹನ)

وَسْـَٔلْ مَنْ أَرْسَلْنَا مِن قَبْلِكَ مِن رُّسُلِنَآ
أَجَعَلْنَا مِن دُونِ ٱلرَّحْمَٰنِ ءَالِهَةً يُعْبَدُونَ ﴿٤٥﴾

ಹೊರತು ಆರಾಧಿಸಲಾಗುವ ಒಬ್ಬ ದೇವರನ್ನು ನಾವು ನಿಶ್ಚಯಿಸಿ-
ದ್ದೇವೆಯೇ?” ಎಂದು.

---

46. ನಾವು ಮೂಸಾರನ್ನು ನಮ್ಮ ದೃಷ್ಟಾಂತಗಳೊಂದಿಗೆ ಫರೋಹ ಮತ್ತು ಅವನ ಮುಖಂಡರ ಕಡೆಗೆ ಕಳುಹಿಸಿದೆವು. ಮೂಸಾ ಹೇಳಿದರು: “ನಿಶ್ಚಯವಾಗಿಯೂ ನಾನು ಸರ್ವಲೋಕಗಳ ಪರಿಪಾಲಕನ (ಅಲ್ಲಾಹನ) ಸಂದೇಶವಾಹಕನಾಗಿದ್ದೇನೆ.”

وَلَقَدْ أَرْسَلْنَا مُوسَىٰ بِـَٔايَٰتِنَآ إِلَىٰ فِرْعَوْنَ
وَمَلَإِي۟هِۦ فَقَالَ إِنِّى رَسُولُ رَبِّ ٱلْعَٰلَمِينَ ٤٦

---

47. ಅವರು ನಮ್ಮ ದೃಷ್ಟಾಂತಗಳೊಂದಿಗೆ ಅವರ ಬಳಿಗೆ ಬಂದಾಗ ಅವರು ಗಹಗಹಿಸಿ ನಗತೊಡಗಿದರು.

فَلَمَّا جَآءَهُم بِـَٔايَٰتِنَآ إِذَا هُم مِّنْهَا
يَضْحَكُونَ ٤٧

---

48. ನಾವು ಅವರಿಗೆ ತೋರಿಸುತ್ತಿದ್ದ ಒಂದೊಂದು ದೃಷ್ಟಾಂತವು ಇನ್ನೊಂದು ದೃಷ್ಟಾಂತಕ್ಕಿಂತ ದೊಡ್ಡದಾಗಿತ್ತು. ನಾವು ಅವರನ್ನು ಶಿಕ್ಷೆಯ ಮೂಲಕ ಹಿಡಿದೆವು. ಅವರು ಮರಳಿ ಬರುವುದಕ್ಕಾಗಿ.

وَمَا نُرِيهِم مِّنْ ءَايَةٍ إِلَّا هِىَ أَكْبَرُ مِنْ أُخْتِهَا ۖ
وَأَخَذْنَٰهُم بِٱلْعَذَابِ لَعَلَّهُمْ يَرْجِعُونَ ٤٨

---

49. ಅವರು ಹೇಳಿದರು: “ಓ ಮಾಟಗಾರನೇ! ನಿನ್ನ ಪರಿಪಾಲಕನು (ಅಲ್ಲಾಹು) ನಿನಗೆ ಏನು ವಾಗ್ದಾನ ಮಾಡಿದ್ದಾನೋ ಅದರ ಮೂಲಕ ಅವನನ್ನು ಕರೆದು ನಮಗೋಸ್ಕರ ಪ್ರಾರ್ಥಿಸು. ನಿಶ್ಚಯವಾಗಿಯೂ ನಾವು ಸನ್ಮಾರ್ಗದಲ್ಲಾಗುವೆವು.”

وَقَالُوا۟ يَٰٓأَيُّهَ ٱلسَّاحِرُ ٱدْعُ لَنَا رَبَّكَ بِمَا عَهِدَ
عِندَكَ إِنَّنَا لَمُهْتَدُونَ ٤٩

---

50. ಆದರೆ ನಾವು ಅವರಿಂದ ಶಿಕ್ಷೆಯನ್ನು ನಿವಾರಿಸಿದಾಗ ಅಗೋ! ಅವರು ಮಾತು ತಪ್ಪುತ್ತಿದ್ದಾರೆ.

فَلَمَّا كَشَفْنَا عَنْهُمُ ٱلْعَذَابَ إِذَا
هُمْ يَنكُثُونَ ٥٠

---

51. ಫರೋಹ ತನ್ನ ಜನರನ್ನು ಕರೆದು ಘೋಷಿಸಿದನು: “ಓ ನನ್ನ ಜನರೇ! ಈಜಿಪ್ಟಿನ ಸಾಮ್ರಾಜ್ಯವು ನನ್ನದಲ್ಲವೇ? ಈ ನದಿಗಳು ನನ್ನ (ಅರಮನೆಯ) ತಳಭಾಗದಿಂದ ಹರಿಯುತ್ತಿವೆ. ನೀವು ನೋಡುವುದಿಲ್ಲವೇ?

وَنَادَىٰ فِرْعَوْنُ فِى قَوْمِهِۦ قَالَ يَٰقَوْمِ أَلَيْسَ
لِى مُلْكُ مِصْرَ وَهَٰذِهِ ٱلْأَنْهَٰرُ تَجْرِى مِن تَحْتِىٓ ۖ
أَفَلَا تُبْصِرُونَ ٥١

---

52. ಮಾತನಾಡಲು ಕೂಡ ಸರಿಯಾಗಿ ಬರದ ಈ ಅಲ್ಪನಿಗಿಂತ ನಾನು ಶ್ರೇಷ್ಠನಲ್ಲವೇ?

أَمْ أَنَا۠ خَيْرٌ مِّنْ هَٰذَا ٱلَّذِى هُوَ مَهِينٌ وَلَا يَكَادُ
يُبِينُ ٥٢

---

53. ಈತನಿಗೆ ಸ್ವರ್ಣ ಕಡಗಗಳನ್ನು ಏಕೆ ತೊಡಿಸಲಾಗಿಲ್ಲ? ಅಥವಾ ಈತನಿಗೆ ಸಹಾಯಕರಾಗಿ ದೇವದೂತರುಗಳು ಏಕೆ ಬಂದಿಲ್ಲ?”

فَلَوْلَآ أُلْقِىَ عَلَيْهِ أَسْوِرَةٌ مِّن ذَهَبٍ أَوْ جَآءَ
مَعَهُ ٱلْمَلَٰٓئِكَةُ مُقْتَرِنِينَ ٥٣

---

54. ಅವನು ತನ್ನ ಜನರನ್ನು ಮರುಳುಗೊಳಿಸಿದನು. ಅವರು ಅವನ ಮಾತನ್ನು ಅನುಸರಿಸಿದರು. ನಿಶ್ಚಯವಾಗಿಯೂ ಅವರು ದುಷ್ಕರ್ಮಿಗಳಾದ ಜನರಾಗಿದ್ದರು.

فَٱسْتَخَفَّ قَوْمَهُۥ فَأَطَاعُوهُ ۚ إِنَّهُمْ كَانُوا۟ قَوْمًا
فَٰسِقِينَ ٥٤

---

55. ಅವರು ನಮ್ಮನ್ನು ರೇಗಿಸಿದಾಗ ನಾವು ಅವರಿಂದ ಪ್ರತೀಕಾರ ಪಡೆದೆವು ಮತ್ತು ಅವರೆಲ್ಲರನ್ನೂ ಮುಳುಗಿಸಿ ಕೊಂದೆವು.

فَلَمَّآ ءَاسَفُونَا ٱنتَقَمْنَا مِنْهُمْ فَأَغْرَقْنَٰهُمْ
أَجْمَعِينَ ٥٥

56. ಹೀಗೆ ನಾವು ಅವರನ್ನು ಒಂದು ಪೂರ್ವ ಮಾದರಿಯಾಗಿ ಮತ್ತು ನಂತರದವರಿಗೆ ಒಂದು ಉದಾಹರಣೆಯಾಗಿ ಮಾಡಿದೆವು.

فَجَعَلْنَٰهُمْ سَلَفًا وَمَثَلًا لِّلْأَخِرِينَ ﴿٥٦﴾

57. ಮರ್ಯಮರ ಪುತ್ರನನ್ನು (ಈಸಾರನ್ನು) ಉದಾಹರಣೆಯಾಗಿ ತೋರಿಸಲಾದಾಗ ಅಗೋ! ನಿಮ್ಮ ಜನರು ಅಟ್ಟಹಾಸದಿಂದ ನಗುತ್ತಿದ್ದಾರೆ.

وَلَمَّا ضُرِبَ ٱبْنُ مَرْيَمَ مَثَلًا إِذَا قَوْمُكَ مِنْهُ يَصِدُّونَ ﴿٥٧﴾

58. ಅವರು ಕೇಳಿದರು: "ನಮ್ಮ ದೇವರುಗಳು ಶ್ರೇಷ್ಠರೋ ಅಥವಾ ಅವನೋ?"[1] ಅವರು ಕೇವಲ ತರ್ಕಕ್ಕಾಗಿ ನಿಮ್ಮ ಮುಂದೆ ಅದನ್ನು ಹೇಳಿದ್ದರು. ವಾಸ್ತವವಾಗಿ, ಅವರು ಜಗಳಗಂಟಿ ಜನರಾಗಿದ್ದಾರೆ.

وَقَالُوٓا۟ ءَأَٰلِهَتُنَا خَيْرٌ أَمْ هُوَ ۚ مَا ضَرَبُوهُ لَكَ إِلَّا جَدَلًۢا ۚ بَلْ هُمْ قَوْمٌ خَصِمُونَ ﴿٥٨﴾

59. ಅವರು (ಈಸಾ) ಕೇವಲ ಒಬ್ಬ ದಾಸ. ನಾವು ಅವರಿಗೆ ಅನುಗ್ರಹವನ್ನು ನೀಡಿ ಅವರನ್ನು ಇಸ್ರಾಯೇಲ್ ಮಕ್ಕಳಿಗೆ ಮಾದರಿಯಾಗಿ ಮಾಡಿದೆವು.

إِنْ هُوَ إِلَّا عَبْدٌ أَنْعَمْنَا عَلَيْهِ وَجَعَلْنَٰهُ مَثَلًا لِّبَنِىٓ إِسْرَٰٓءِيلَ ﴿٥٩﴾

60. ನಾವು ಇಚ್ಛಿಸುತ್ತಿದ್ದರೆ ಭೂಮಿಯಲ್ಲಿ ನಿಮ್ಮ ಬದಲಿಗೆ (ಒಬ್ಬರ ನಂತರ ಒಬ್ಬರು) ಉತ್ತರಾಧಿಕಾರಿಗಳಾಗಿ ಬರುವ ದೇವದೂತರು-ಗಳನ್ನು ಉಂಟುಮಾಡುತ್ತಿದ್ದೆವು.

وَلَوْ نَشَآءُ لَجَعَلْنَا مِنكُم مَّلَٰٓئِكَةً فِى ٱلْأَرْضِ يَخْلُفُونَ ﴿٦٠﴾

61. ನಿಶ್ಚಯವಾಗಿಯೂ ಅವರು (ಈಸಾ) ಅಂತ್ಯಸಮಯದ ಒಂದು ಚಿಹ್ನೆಯಾಗಿದ್ದಾರೆ.[2] ಆದ್ದರಿಂದ ನೀವು ಅದರ (ಅಂತ್ಯಸಮಯದ) ವಿಷಯದಲ್ಲಿ ಸಂಶಯಪಡಬೇಡಿ. ನನ್ನನ್ನು ಅನುಸರಿಸಿರಿ. ಇದೇ ನೇರವಾದ ಮಾರ್ಗ.

وَإِنَّهُۥ لَعِلْمٌ لِّلسَّاعَةِ فَلَا تَمْتَرُنَّ بِهَا وَٱتَّبِعُونِ ۚ هَٰذَا صِرَٰطٌ مُّسْتَقِيمٌ ﴿٦١﴾

62. ಶೈತಾನನು ನಿಮ್ಮನ್ನು (ನೇರಮಾರ್ಗದಿಂದ) ತಡೆಯದಿರಲಿ. ನಿಶ್ಚಯವಾಗಿಯೂ ಅವನು ನಿಮ್ಮ ಪ್ರತ್ಯಕ್ಷ ವೈರಿಯಾಗಿದ್ದಾನೆ.

وَلَا يَصُدَّنَّكُمُ ٱلشَّيْطَٰنُ ۖ إِنَّهُۥ لَكُمْ عَدُوٌّ مُّبِينٌ ﴿٦٢﴾

63. ಈಸಾ ಪವಾಡಗಳೊಂದಿಗೆ ಬಂದು ಹೇಳಿದರು: "ನಿಶ್ಚಯವಾಗಿಯೂ ನಾನು ನಿಮ್ಮ ಬಳಿಗೆ ವಿವೇಕವನ್ನು ತಂದಿದ್ದೇನೆ. ನೀವು ಭಿನ್ನಮತ ತಳೆದಿರುವ ವಿಷಯಗಳಲ್ಲಿ ಕೆಲವನ್ನು ನಿಮಗೆ ವಿವರಿಸಿಕೊಡುವುದಕ್ಕಾಗಿ. ಆದ್ದರಿಂದ ನೀವು ಅಲ್ಲಾಹನನ್ನು ಭಯಪಡಿರಿ ಮತ್ತು ನನ್ನನ್ನು ಅನುಸರಿಸಿರಿ.

وَلَمَّا جَآءَ عِيسَىٰ بِٱلْبَيِّنَٰتِ قَالَ قَدْ جِئْتُكُم بِٱلْحِكْمَةِ وَلِأُبَيِّنَ لَكُم بَعْضَ ٱلَّذِى تَخْتَلِفُونَ فِيهِ ۖ فَٱتَّقُوا۟ ٱللَّهَ وَأَطِيعُونِ ﴿٦٣﴾

64. ನಿಶ್ಚಯವಾಗಿಯೂ ಅಲ್ಲಾಹನೇ ನನ್ನ ಮತ್ತು ನಿಮ್ಮ ಪರಿಪಾಲಕನು. ಆದ್ದರಿಂದ ಅವನನ್ನೇ ಆರಾಧಿಸಿರಿ. ಇದೇ ನೇರವಾದ ಮಾರ್ಗ."

إِنَّ ٱللَّهَ هُوَ رَبِّى وَرَبُّكُمْ فَٱعْبُدُوهُ ۚ هَٰذَا صِرَٰطٌ مُّسْتَقِيمٌ ﴿٦٤﴾

---

[1] "ನಿಶ್ಚಯವಾಗಿಯೂ, ನೀವು ಮತ್ತು ಅಲ್ಲಾಹನನ್ನು ಬಿಟ್ಟು ನೀವು ಆರಾಧಿಸುವ ದೇವರುಗಳು ನರಕದ ಇಂಧನವಾಗಲಿದ್ದಾರೆ."

[2] ಅಂದರೆ ಅಂತ್ಯಸಮಯವು ಹತ್ತಿರವಾಗುವಾಗ ಈಸಾ (ಅವರ ಮೇಲೆ ಶಾಂತಿಯಿರಲಿ) ಭೂಲೋಕಕ್ಕೆ ಇಳಿದು ಬರುವರು.

| | | |
|---|---|---|
| 65. | ನಂತರ (ಇಸ್ರಾಯೇಲರಲ್ಲಿದ್ದ) ಗುಂಪುಗಳು ಪರಸ್ಪರ ಭಿನ್ನಮತ ತಳೆದರು. ಆದ್ದರಿಂದ ಅಕ್ರಮಿಗಳಿಗೆ ಯಾತನಾಮಯ ದಿನದ ಶಿಕ್ಷೆಯಿಂದಾಗಿ ವಿನಾಶ ಕಾದಿದೆ! | فَٱخۡتَلَفَ ٱلۡأَحۡزَابُ مِنۢ بَيۡنِهِمۡۖ فَوَيۡلٞ لِّلَّذِينَ ظَلَمُواْ مِنۡ عَذَابِ يَوۡمٍ أَلِيمٍ ٦٥ |
| 66. | ಅವರು ನಿರೀಕ್ಷಿಸದ ರೀತಿಯಲ್ಲಿ ಹಠಾತ್ತನೆ ಅಂತ್ಯಸಮಯವು ಅವರ ಬಳಿಗೆ ಬರುವುದನ್ನು ಅವರು ಕಾಯುತ್ತಿದ್ದಾರೆಯೇ? | هَلۡ يَنظُرُونَ إِلَّا ٱلسَّاعَةَ أَن تَأۡتِيَهُم بَغۡتَةٗ وَهُمۡ لَا يَشۡعُرُونَ ٦٦ |
| 67. | ಅಂದು ಆಪ್ತಮಿತ್ರರು ಪರಸ್ಪರ ವೈರಿಗಳಾಗುವರು. ದೇವಭಯ-ವುಳ್ಳವರ ಹೊರತು. | ٱلۡأَخِلَّآءُ يَوۡمَئِذِۭ بَعۡضُهُمۡ لِبَعۡضٍ عَدُوٌّ إِلَّا ٱلۡمُتَّقِينَ ٦٧ |
| 68. | (ದೇವಭಯವುಳ್ಳವರೊಡನೆ ಹೇಳಲಾಗುವುದು): "ಓ ನನ್ನ ದಾಸರೇ! ಇಂದು ನಿಮಗೆ ಯಾವುದೇ ಭಯವಿಲ್ಲ. ನೀವು ದುಃಖಿಸಬೇಕಾಗಿಯೂ ಇಲ್ಲ. | يَٰعِبَادِ لَا خَوۡفٌ عَلَيۡكُمُ ٱلۡيَوۡمَ وَلَآ أَنتُمۡ تَحۡزَنُونَ ٦٨ |
| 69. | ಅವರು (ದಾಸರು) ಯಾರೆಂದರೆ, ನಮ್ಮ ವಚನಗಳಲ್ಲಿ ವಿಶ್ವಾಸ-ವಿಟ್ಟವರು ಮತ್ತು ಮುಸ್ಲಿಮರಾದವರು (ನನ್ನ ಆಜ್ಞೆಗಳನ್ನು ಶಿರಸಾ ಪಾಲಿಸಿದವರು). | ٱلَّذِينَ ءَامَنُواْ بِـَٔايَٰتِنَا وَكَانُواْ مُسۡلِمِينَ ٦٩ |
| 70. | ನೀವು ಮತ್ತು ನಿಮ್ಮ ಪತ್ನಿಯರು ಸಂತೋಷದಿಂದ ಸ್ವರ್ಗವನ್ನು ಪ್ರವೇಶಿಸಿರಿ." | ٱدۡخُلُواْ ٱلۡجَنَّةَ أَنتُمۡ وَأَزۡوَٰجُكُمۡ تُحۡبَرُونَ ٧٠ |
| 71. | ಸ್ವರ್ಣ ಬಟ್ಟಲುಗಳನ್ನು ಮತ್ತು ಲೋಟಗಳನ್ನು ಅವರ ಸುತ್ತಲೂ ತರಲಾಗುವುದು. ಅವರ ಮನಸ್ಸುಗಳು ಬಯಸುವುದೆಲ್ಲವೂ ಮತ್ತು ಅವರ ಕಣ್ಣುಗಳಿಗೆ ಆನಂದ ನೀಡುವುದೆಲ್ಲವೂ ಅಲ್ಲಿರುವುವು. ನೀವು ಅದರಲ್ಲಿ ಶಾಶ್ವತವಾಗಿ ವಾಸಿಸುವಿರಿ. | يُطَافُ عَلَيۡهِم بِصِحَافٖ مِّن ذَهَبٖ وَأَكۡوَابٖۖ وَفِيهَا مَا تَشۡتَهِيهِ ٱلۡأَنفُسُ وَتَلَذُّ ٱلۡأَعۡيُنُۖ وَأَنتُمۡ فِيهَا خَٰلِدُونَ ٧١ |
| 72. | ಆ ಸ್ವರ್ಗವನ್ನು ನೀವು ಮಾಡಿರುವ ಕರ್ಮಗಳ ಕಾರಣ ನಿಮಗೆ ಉತ್ತರಾಧಿಕಾರವಾಗಿ ನೀಡಲಾಗಿದೆ. | وَتِلۡكَ ٱلۡجَنَّةُ ٱلَّتِيٓ أُورِثۡتُمُوهَا بِمَا كُنتُمۡ تَعۡمَلُونَ ٧٢ |
| 73. | ಅಲ್ಲಿ ನಿಮಗೆ ಯಥೇಷ್ಟ ಹಣ್ಣು-ಹಂಪಲುಗಳಿವೆ. ಅದರಿಂದ ನೀವು ತಿನ್ನುವಿರಿ. | لَكُمۡ فِيهَا فَٰكِهَةٞ كَثِيرَةٞ مِّنۡهَا تَأۡكُلُونَ ٧٣ |
| 74. | ನಿಶ್ಚಯವಾಗಿಯೂ ಅಪರಾಧಿಗಳು ನರಕದ ಶಿಕ್ಷೆಯಲ್ಲಿ ಶಾಶ್ವತವಾಗಿ ವಾಸಿಸುವರು. | إِنَّ ٱلۡمُجۡرِمِينَ فِي عَذَابِ جَهَنَّمَ خَٰلِدُونَ ٧٤ |
| 75. | ಅದನ್ನು ಅವರಿಗೆ ಹಗುರಗೊಳಿಸಲಾಗುವುದೇ ಇಲ್ಲ. ಅವರು ಅದರಲ್ಲಿ ನಿರಾಶರಾಗಿ ಕಳೆಯುವರು. | لَا يُفَتَّرُ عَنۡهُمۡ وَهُمۡ فِيهِ مُبۡلِسُونَ ٧٥ |
| 76. | ನಾವು ಅವರಿಗೆ ಅನ್ಯಾಯ ಮಾಡಿಲ್ಲ. ಆದರೆ ಅವರೇ ಅವರಿಗೆ ಅನ್ಯಾಯ ಮಾಡಿದರು. | وَمَا ظَلَمۡنَٰهُمۡ وَلَٰكِن كَانُواْ هُمُ ٱلظَّٰلِمِينَ ٧٦ |

77. ಅವರು ಕೂಗಿ ಹೇಳುವರು: "ಓ ಮಾಲಿಕ್! ನಿಮ್ಮ ಪರಿಪಾಲಕನು (ಅಲ್ಲಾಹು) ನಮ್ಮನ್ನು ಮುಗಿಸಿ ಬಿಡಲು ಹೇಳಿ!" ಮಾಲಿಕ್ ಹೇಳುವರು: "ನೀವು (ಶಾಶ್ವತವಾಗಿ) ಇಲ್ಲೇ ವಾಸಿಸುವಿರಿ."

وَنَادَوْاْ يَٰمَٰلِكُ لِيَقْضِ عَلَيْنَا رَبُّكَۖ قَالَ إِنَّكُم مَّٰكِثُونَ ﴿٧٧﴾

78. ನಿಶ್ಚಯವಾಗಿಯೂ ನಾವು ಸತ್ಯವನ್ನು ನಿಮ್ಮ ಬಳಿಗೆ ತಂದಿದ್ದೆವು. ಆದರೆ ನಿಮ್ಮಲ್ಲಿ ಹೆಚ್ಚಿನವರು ಸತ್ಯವನ್ನು ದ್ವೇಷಿಸುತ್ತಿದ್ದರು.

لَقَدْ جِئْنَٰكُم بِٱلْحَقِّ وَلَٰكِنَّ أَكْثَرَكُمْ لِلْحَقِّ كَٰرِهُونَ ﴿٧٨﴾

79. ಅವರು ಯಾವುದಾದರೂ ವಿಷಯವನ್ನು ತೀರ್ಮಾನಿಸಿ ಬಿಟ್ಟಿದ್ದಾರೆಯೇ? ಹಾಗಾದರೆ ನಾವು ಕೂಡ ಒಂದು ವಿಷಯವನ್ನು ತೀರ್ಮಾನಿಸುವೆವು.

أَمْ أَبْرَمُوٓاْ أَمْرًا فَإِنَّا مُبْرِمُونَ ﴿٧٩﴾

80. ಅವರ ರಹಸ್ಯ ಮಾತುಗಳನ್ನು ಮತ್ತು ಗುಪ್ತ ಸಂಭಾಷಣೆಗಳನ್ನು ನಾವು ಕೇಳುತ್ತಿಲ್ಲ ಎಂದು ಅವರು ಭಾವಿಸಿದ್ದಾರೆಯೇ? ಹೌದು! ನಮ್ಮ ದೂತರು ಅವರ ಬಳಿ ದಾಖಲಿಸುತ್ತಿದ್ದಾರೆ.

أَمْ يَحْسَبُونَ أَنَّا لَا نَسْمَعُ سِرَّهُمْ وَنَجْوَىٰهُمۚ بَلَىٰ وَرُسُلُنَا لَدَيْهِمْ يَكْتُبُونَ ﴿٨٠﴾

81. ಹೇಳಿರಿ: "ಪರಮ ದಯಾಮಯನಿಗೆ (ಅಲ್ಲಾಹನಿಗೆ) ಮಕ್ಕಳಿರುತ್ತಿದ್ದರೆ ನಾನೇ ಮೊತ್ತಮೊದಲು (ಅವರನ್ನು) ಆರಾಧಿಸುತ್ತಿದ್ದೆನು."

قُلْ إِن كَانَ لِلرَّحْمَٰنِ وَلَدٌ فَأَنَا۠ أَوَّلُ ٱلْعَٰبِدِينَ ﴿٨١﴾

82. ಭೂಮ್ಯಾಕಾಶಗಳ ಮತ್ತು ಮಹಾ ಸಿಂಹಾಸನದ ಪರಿಪಾಲಕನು (ಅಲ್ಲಾಹು) ಅವರು ಸುಳ್ಳು ಸುಳ್ಳಾಗಿ ಹೇಳುವ ಎಲ್ಲಾ ಆರೋಪಗಳಿಂದ ಎಷ್ಟೋ ಪರಿಶುದ್ಧನಾಗಿದ್ದಾನೆ.

سُبْحَٰنَ رَبِّ ٱلسَّمَٰوَٰتِ وَٱلْأَرْضِ رَبِّ ٱلْعَرْشِ عَمَّا يَصِفُونَ ﴿٨٢﴾

83. ಆದ್ದರಿಂದ ನೀವು ಅವರನ್ನು ಅವರ ವ್ಯರ್ಥ ಮಾತುಗಳಲ್ಲಿ ಮತ್ತು ಆಟಗಳಲ್ಲಿ ತಲ್ಲೀನರಾಗಲು ಬಿಟ್ಟುಬಿಡಿ. ಎಲ್ಲಿಯರೆಗೆಂದರೆ ಅವರಿಗೆ ಎಚ್ಚರಿಕೆ ನೀಡಲಾದ ಆ ದಿನವನ್ನು ಅವರು ಎದುರುಗೊಳ್ಳುವ ತನಕ.

فَذَرْهُمْ يَخُوضُواْ وَيَلْعَبُواْ حَتَّىٰ يُلَٰقُواْ يَوْمَهُمُ ٱلَّذِى يُوعَدُونَ ﴿٨٣﴾

84. ಅವನೇ ಆಕಾಶದಲ್ಲಿರುವ ದೇವನು ಮತ್ತು ಭೂಮಿಯಲ್ಲಿಯೂ ಆರಾಧನೆಗೆ ಅರ್ಹನಾಗಿರುವವನು. ಅವನು ವಿವೇಕಪೂರ್ಣನು ಮತ್ತು ಸರ್ವಜ್ಞನಾಗಿದ್ದಾನೆ.

وَهُوَ ٱلَّذِى فِى ٱلسَّمَآءِ إِلَٰهٌ وَفِى ٱلْأَرْضِ إِلَٰهٌۚ وَهُوَ ٱلْحَكِيمُ ٱلْعَلِيمُ ﴿٨٤﴾

85. ಭೂಮ್ಯಾಕಾಶಗಳ ಮತ್ತು ಅವುಗಳ ನಡುವೆಯಿರುವ ಎಲ್ಲಾ ವಸ್ತುಗಳ ಆಧಿಪತ್ಯವು ಯಾರದ್ದೋ ಅವನು ಸಮೃದ್ಧಪೂರ್ಣನಾಗಿದ್ದಾನೆ. ಅಂತ್ಯದಿನದ ಜ್ಞಾನವಿರುವುದು ಅವನ ಬಳಿ ಮಾತ್ರ. ನಿಮ್ಮನ್ನು ಅವನ ಬಳಿಗೇ ಮರಳಿಸಲಾಗುವುದು.

وَتَبَارَكَ ٱلَّذِى لَهُۥ مُلْكُ ٱلسَّمَٰوَٰتِ وَٱلْأَرْضِ وَمَا بَيْنَهُمَا وَعِندَهُۥ عِلْمُ ٱلسَّاعَةِ وَإِلَيْهِ تُرْجَعُونَ ﴿٨٥﴾

86. ಅವರು ಅಲ್ಲಾಹನನ್ನು ಬಿಟ್ಟು ಯಾರನ್ನು ಕರೆದು ಪ್ರಾರ್ಥಿಸುತ್ತಿದ್ದಾರೋ ಅವರಿಗೆ ಶಿಫಾರಸು ಮಾಡುವ ಯಾವುದೇ ಅಧಿಕಾರವಿಲ್ಲ. ಸತ್ಯಕ್ಕೆ ಸಾಕ್ಷ್ಯ ವಹಿಸಿದವರು ಮತ್ತು ಜ್ಞಾನವುಳ್ಳವರ ಹೊರತು.

وَلَا يَمْلِكُ ٱلَّذِينَ يَدْعُونَ مِن دُونِهِ ٱلشَّفَٰعَةَ إِلَّا مَن شَهِدَ بِٱلْحَقِّ وَهُمْ يَعْلَمُونَ ﴿٨٦﴾

87. ನೀವು ಅವರೊಡನೆ, "ಅವರನ್ನು ಸೃಷ್ಟಿಸಿದ್ದು ಯಾರು?" ಎಂದು ಕೇಳಿದರೆ ಖಂಡಿತವಾಗಿಯೂ ಅವರು "ಅಲ್ಲಾಹು" ಎನ್ನುತ್ತಾರೆ. ಆದರೂ ಅವರನ್ನು ತಪ್ಪಿಸಲಾಗುತ್ತಿರುವುದು ಹೇಗೆ?

وَلَئِن سَأَلۡتَهُم مَّنۡ خَلَقَهُمۡ لَيَقُولُنَّ ٱللَّهُۖ فَأَنَّىٰ يُؤۡفَكُونَ ﴿٨٧﴾

88. ಅವರು (ಪ್ರವಾದಿಯು ಹೆಚ್ಚಾಗಿ) ಹೇಳುವ ಈ ಮಾತು: "ನನ್ನ ಪರಿಪಾಲಕನೇ! ನಿಶ್ಚಯವಾಗಿಯೂ ಇವರು ವಿಶ್ವಾಸವಿಡದ ಜನರಾಗಿದ್ದಾರೆ."

وَقِيلِهِۦ يَٰرَبِّ إِنَّ هَٰٓؤُلَآءِ قَوۡمٞ لَّا يُؤۡمِنُونَ ﴿٨٨﴾

89. ಆದ್ದರಿಂದ ನೀವು ಅವರಿಂದ ವಿಮುಖರಾಗಿ ಬಿಡಿ. ಅವರೊಡನೆ "ಸಲಾಂ" ಎಂದು ಹೇಳಿರಿ. ಅವರು ಸದ್ಯವೇ ತಿಳಿದುಕೊಳ್ಳುವರು.

فَٱصۡفَحۡ عَنۡهُمۡ وَقُلۡ سَلَٰمٞۚ فَسَوۡفَ يَعۡلَمُونَ ﴿٨٩﴾

# 44. ಅದ್ದುಖಾನ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಹಾ-ಮೀಮ್.

حمٓ ﴿١﴾

2. ಸ್ಪಷ್ಟ ಗ್ರಂಥದ ಮೇಲಾಣೆ!

وَٱلۡكِتَٰبِ ٱلۡمُبِينِ ﴿٢﴾

3. ನಿಶ್ಚಯವಾಗಿಯೂ ನಾವು ಇದನ್ನು ಒಂದು ಸಮೃದ್ಧ ರಾತ್ರಿಯಲ್ಲಿ ಅವತೀರ್ಣಗೊಳಿಸಿದ್ದೇವೆ. ನಿಶ್ಚಯವಾಗಿಯೂ ನಾವು ಮುನ್ನೆಚ್ಚರಿಕೆ ನೀಡುವವರಾಗಿದ್ದೇವೆ.

إِنَّآ أَنزَلۡنَٰهُ فِي لَيۡلَةٖ مُّبَٰرَكَةٍۚ إِنَّا كُنَّا مُنذِرِينَ ﴿٣﴾

4. ಆ ರಾತ್ರಿಯಲ್ಲಿ ಎಲ್ಲಾ ಕಟ್ಟುನಿಟ್ಟಿನ ಕಾರ್ಯಗಳನ್ನು ನಿರ್ಣಯಿಸಲಾಗುವುದು.

فِيهَا يُفۡرَقُ كُلُّ أَمۡرٍ حَكِيمٍ ﴿٤﴾

5. ನಮ್ಮ ಕಡೆಯ ಆಜ್ಞೆಯಿಂದ! ನಿಶ್ಚಯವಾಗಿಯೂ ನಾವೇ (ಸಂದೇ-ಶವಾಹಕರನ್ನು) ಕಳುಹಿಸುವವರು.

أَمۡرٗا مِّنۡ عِندِنَآۚ إِنَّا كُنَّا مُرۡسِلِينَ ﴿٥﴾

6. ನಿಮ್ಮ ಪರಿಪಾಲಕನ (ಅಲ್ಲಾಹನ) ದಯೆಯಿಂದ. ನಿಶ್ಚಯವಾಗಿಯೂ ಅವನು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

رَحۡمَةٗ مِّن رَّبِّكَۚ إِنَّهُۥ هُوَ ٱلسَّمِيعُ ٱلۡعَلِيمُ ﴿٦﴾

7. ಅವನು ಭೂಮ್ಯಾಕಾಶಗಳ ಮತ್ತು ಅವುಗಳ ನಡುವೆಯಿರುವ ಎಲ್ಲಾ ವಸ್ತುಗಳ ಪರಿಪಾಲಕ. ನೀವು ದೃಢವಾಗಿ ವಿಶ್ವಾಸವಿಡುವವರಾಗಿದ್ದರೆ.

رَبِّ ٱلسَّمَٰوَٰتِ وَٱلۡأَرۡضِ وَمَا بَيۡنَهُمَآۖ إِن كُنتُم مُّوقِنِينَ ﴿٧﴾

8. ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ಅವನು ಜೀವ ಮತ್ತು ಮರಣವನ್ನು ನೀಡುತ್ತಾನೆ. ಅವನು ನಿಮ್ಮ ಮತ್ತು ನಿಮ್ಮ ಪೂರ್ವಜರ ಪರಿಪಾಲಕನಾಗಿದ್ದಾನೆ.

لَآ إِلَٰهَ إِلَّا هُوَ يُحۡيِۦ وَيُمِيتُۖ رَبُّكُمۡ وَرَبُّ ءَابَآئِكُمُ ٱلۡأَوَّلِينَ ﴿٨﴾

| | | |
|---|---|---|
| 9. | ಆದರೆ ಅವರು ಸಂಶಯದಲ್ಲಿ ಬಿದ್ದು ಆಡುತ್ತಿದ್ದಾರೆ. | بَلۡ هُمۡ فِي شَكّٖ يَلۡعَبُونَ ٩ |
| 10. | ಆಕಾಶವು ಸ್ಪಷ್ಟವಾಗಿ ಕಾಣುವ ಹೊಗೆಯನ್ನು ತರುವ ದಿನವನ್ನು ನಿರೀಕ್ಷಿಸಿ. | فَٱرۡتَقِبۡ يَوۡمَ تَأۡتِي ٱلسَّمَآءُ بِدُخَانٖ مُّبِينٖ ١٠ |
| 11. | ಅದು ಮನುಷ್ಯರನ್ನು ಆವರಿಸಿಕೊಳ್ಳುವುದು. ಇದು ಯಾತನಾಮಯ ಶಿಕ್ಷೆಯಾಗಿದೆ. | يَغۡشَى ٱلنَّاسَۖ هَٰذَا عَذَابٌ أَلِيمٞ ١١ |
| 12. | (ಅವರು ಹೇಳುವರು): “ನಮ್ಮ ಪರಿಪಾಲಕನೇ! ನಮ್ಮಿಂದ ಈ ಶಿಕ್ಷೆಯನ್ನು ನಿವಾರಿಸು. ನಿಶ್ಚಯವಾಗಿಯೂ ನಾವು ವಿಶ್ವಾಸವಿಡುತ್ತೇವೆ.” | رَّبَّنَا ٱكۡشِفۡ عَنَّا ٱلۡعَذَابَ إِنَّا مُؤۡمِنُونَ ١٢ |
| 13. | ಅವರಿಗೆ ಉಪದೇಶವು ಪ್ರಯೋಜನಪಡುವುದು ಹೇಗೆ? (ವಿಷಯವನ್ನು) ಸ್ಪಷ್ಟವಾಗಿ ವಿವರಿಸುವ ಒಬ್ಬ ಸಂದೇಶವಾಹಕರು ಅವರ ಬಳಿಗೆ ಬಂದಿದ್ದರು. | أَنَّىٰ لَهُمُ ٱلذِّكۡرَىٰ وَقَدۡ جَآءَهُمۡ رَسُولٞ مُّبِينٞ ١٣ |
| 14. | ಆದರೂ ಅವರು ಆ ಸಂದೇಶವಾಹಕರಿಂದ ವಿಮುಖರಾದರು. ಅವರು ಹೇಳಿದರು: “ಇವನು ಕಲಿಸಿಕೊಡಲಾದ ಮಾನಸಿಕ ಅಸ್ವಸ್ಥ!” | ثُمَّ تَوَلَّوۡاْ عَنۡهُ وَقَالُواْ مُعَلَّمٞ مَّجۡنُونٌ ١٤ |
| 15. | ನಿಶ್ಚಯವಾಗಿಯೂ ನಾವು ಶಿಕ್ಷೆಯನ್ನು ಸ್ವಲ್ಪ ನಿವಾರಿಸುವೆವು. ಆದರೆ ನೀವು ನಿಶ್ಚಯವಾಗಿಯೂ (ಹಿಂದಿನ ಸ್ಥಿತಿಗೇ) ಮರಳುವಿರಿ! | إِنَّا كَاشِفُواْ ٱلۡعَذَابِ قَلِيلًاۚ إِنَّكُمۡ عَآئِدُونَ ١٥ |
| 16. | ನಾವು ಅತ್ಯಂತ ಬಲಿಷ್ಠ ಹಿಡಿತದೊಂದಿಗೆ ಹಿಡಿಯುವ ದಿನ! ನಿಶ್ಚಯವಾಗಿಯೂ ನಾವು ಪ್ರತೀಕಾರ ಪಡೆಯುವೆವು. | يَوۡمَ نَبۡطِشُ ٱلۡبَطۡشَةَ ٱلۡكُبۡرَىٰٓ إِنَّا مُنتَقِمُونَ ١٦ |
| 17. | ಅವರಿಗಿಂತ ಮೊದಲು ಫರೋಹನ ಜನರನ್ನು ನಾವು ಪರೀಕ್ಷಿಸಿದ್ದೆವು. ಒಬ್ಬ ಗೌರವಾನ್ವಿತ ಸಂದೇಶವಾಹಕರು (ಮೂಸಾ) ಅವರ ಬಳಿಗೆ ಬಂದಿದ್ದರು. | وَلَقَدۡ فَتَنَّا قَبۡلَهُمۡ قَوۡمَ فِرۡعَوۡنَ وَجَآءَهُمۡ رَسُولٞ كَرِيمٌ ١٧ |
| 18. | (ಅವರು ಹೇಳಿದರು): “ಅಲ್ಲಾಹನ ದಾಸರನ್ನು ನನಗೆ ಒಪ್ಪಿಸಿರಿ. ನಿಶ್ಚಯವಾಗಿಯೂ ನಾನು ನಿಮ್ಮ ಬಳಿಗೆ ಬಂದ ಒಬ್ಬ ವಿಶ್ವಾಸಾರ್ಹ ಸಂದೇಶವಾಹಕನಾಗಿದ್ದೇನೆ. | أَنۡ أَدُّوٓاْ إِلَيَّ عِبَادَ ٱللَّهِۖ إِنِّي لَكُمۡ رَسُولٌ أَمِينٞ ١٨ |
| 19. | ನೀವು ಅಲ್ಲಾಹನ ಮುಂದೆ ದರ್ಪ ತೋರಬೇಡಿ. ನಿಶ್ಚಯವಾಗಿಯೂ ನಾನು ನಿಮ್ಮ ಬಳಿಗೆ ಸ್ಪಷ್ಟ ಸಾಕ್ಷ್ಯವನ್ನು ತರುವೆನು. | وَأَن لَّا تَعۡلُواْ عَلَى ٱللَّهِۖ إِنِّيٓ ءَاتِيكُم بِسُلۡطَٰنٖ مُّبِينٖ ١٩ |
| 20. | ನೀವು ನನಗೆ ಕಲ್ಲೆಸೆಯದಿರಲು ನಾನು ನನ್ನ ಮತ್ತು ನಿಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ಅಭಯ ಯಾಚಿಸುತ್ತೇನೆ. | وَإِنِّي عُذۡتُ بِرَبِّي وَرَبِّكُمۡ أَن تَرۡجُمُونِ ٢٠ |

21. ನೀವು ನನ್ನಲ್ಲಿ ವಿಶ್ವಾಸವಿಡುವುದಿಲ್ಲ ಎಂದಾದರೆ ನನ್ನಿಂದ ಬೇರೆ ಹೋಗಿರಿ.”

وَإِن لَّمْ تُؤْمِنُوا۟ لِى فَٱعْتَزِلُونِ ٢١

22. ಇವರೆಲ್ಲರೂ ಅಪರಾಧಿಗಳಾದ ಜನರು ಎಂದು ಅವರು ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಕರೆದು ಪ್ರಾರ್ಥಿಸಿದರು.

فَدَعَا رَبَّهُۥٓ أَنَّ هَٰٓؤُلَآءِ قَوْمٌ مُّجْرِمُونَ ٢٢

23. (ಅಲ್ಲಾಹು ಹೇಳಿದನು): “ನೀವು ರಾತ್ರಿ ವೇಳೆ ನನ್ನ ದಾಸರೊಡನೆ ಹೊರಡಿರಿ. ನಿಶ್ಚಯವಾಗಿಯೂ ವೈರಿಗಳು ನಿಮ್ಮನ್ನು ಹಿಂಬಾಲಿಸುವರು.

فَأَسْرِ بِعِبَادِى لَيْلًا إِنَّكُم مُّتَّبَعُونَ ٢٣

24. ನೀವು ಸಮುದ್ರವನ್ನು ಶಾಂತ ಸ್ಥಿತಿಯಲ್ಲಿ ಬಿಟ್ಟುಬಿಡಿ. ನಿಶ್ಚಯವಾಗಿಯೂ ಈ ಸೈನ್ಯವನ್ನು ಮುಳುಗಿಸಲಾಗುವುದು.

وَٱتْرُكِ ٱلْبَحْرَ رَهْوًا ۖ إِنَّهُمْ جُندٌ مُّغْرَقُونَ ٢٤

25. ಅವರು ಎಷ್ಟೊಂದು ತೋಟಗಳನ್ನು ಮತ್ತು ತೊರೆಗಳನ್ನು ಬಿಟ್ಟು ಹೋದರು!

كَمْ تَرَكُوا۟ مِن جَنَّٰتٍ وَعُيُونٍ ٢٥

26. ಎಷ್ಟೊಂದು ಕೃಷಿಗಳನ್ನು ಮತ್ತು ಗೌರವಾನ್ವಿತ ವಸತಿಗಳನ್ನು!

وَزُرُوعٍ وَمَقَامٍ كَرِيمٍ ٢٦

27. ಅವರು ಆನಂದದಿಂದ ಅನುಭವಿಸುತ್ತಿದ್ದ ಎಷ್ಟೊಂದು ಸವಲತ್ತುಗಳನ್ನು!

وَنَعْمَةٍ كَانُوا۟ فِيهَا فَٰكِهِينَ ٢٧

28. ಈ ರೀತಿ ಅದು ಸಂಭವಿಸಿತು. ನಾವು ಅವೆಲ್ಲವನ್ನೂ ಬೇರೆ ಜನರಿಗೆ ಉತ್ತರಾಧಿಕಾರವಾಗಿ ನೀಡಿದೆವು.

كَذَٰلِكَ ۖ وَأَوْرَثْنَٰهَا قَوْمًا ءَاخَرِينَ ٢٨

29. ಆಕಾಶ ಅಥವಾ ಭೂಮಿ ಅವರಿಗಾಗಿ ಅಳಲಿಲ್ಲ. ಅವರಿಗೆ ಕಾಲಾವಕಾಶವೂ ದೊರೆಯಲಿಲ್ಲ.

فَمَا بَكَتْ عَلَيْهِمُ ٱلسَّمَآءُ وَٱلْأَرْضُ وَمَا كَانُوا۟
مُنظَرِينَ ٢٩

30. ನಾವು ಇಸ್ರಾಯೇಲ್ ಮಕ್ಕಳನ್ನು ಅವಮಾನಕರ ಶಿಕ್ಷೆಯಿಂದ ಪಾರು ಮಾಡಿದೆವು.

وَلَقَدْ نَجَّيْنَا بَنِىٓ إِسْرَٰٓءِيلَ مِنَ
ٱلْعَذَابِ ٱلْمُهِينِ ٣٠

31. ಫರೋಹನಿಂದ. ನಿಶ್ಚಯವಾಗಿಯೂ ಅವನು ಅಹಂಕಾರಿಯಾಗಿದ್ದು ಎಲ್ಲೆ ಮೀರಿದವರಲ್ಲಿ ಸೇರಿದ್ದನು.

مِن فِرْعَوْنَ ۚ إِنَّهُۥ كَانَ عَالِيًا مِّنَ ٱلْمُسْرِفِينَ ٣١

32. ನಿಶ್ಚಯವಾಗಿಯೂ ನಾವು ತಿಳಿದೂ ಸಹ ಇಸ್ರಾಯೇಲ್ ಮಕ್ಕಳನ್ನು (ಸಮಕಾಲೀನ) ಜಗತ್ತಿನಲ್ಲಿ ಶ್ರೇಷ್ಠಗೊಳಿಸಿದೆವು.

وَلَقَدِ ٱخْتَرْنَٰهُمْ عَلَىٰ عِلْمٍ عَلَى ٱلْعَٰلَمِينَ ٣٢

33. ನಾವು ಅವರಿಗೆ ಸ್ಪಷ್ಟ ಪರೀಕ್ಷೆಯನ್ನು ಹೊಂದಿದ್ದ ದೃಷ್ಟಾಂತಗಳನ್ನು ನೀಡಿದೆವು.

وَءَاتَيْنَٰهُم مِّنَ ٱلْءَايَٰتِ مَا فِيهِ بَلَٰٓؤٌا۟ مُّبِينٌ ٣٣

34. ನಿಶ್ಚಯವಾಗಿಯೂ ಇವರು (ಸತ್ಯನಿಷೇಧಿಗಳು) ಹೇಳುತ್ತಾರೆ:

إِنَّ هَٰٓؤُلَآءِ لَيَقُولُونَ ٣٤

35. “ನಮ್ಮ ಮೊದಲ ಸಾವಲ್ಲದೆ ಬೇರೇನೂ ಇಲ್ಲ. ನಮ್ಮನ್ನು ಪುನಃ

إِنْ هِىَ إِلَّا مَوْتَتُنَا ٱلْأُولَىٰ وَمَا

| | | |
|---|---|---|
| | ಜೀವಂತಗೊಳಿಸಲಾಗುವುದೂ ಇಲ್ಲ. | نَحْنُ بِمُنشَرِينَ ﴿٣٥﴾ |
| 36. | ನೀವು ಸತ್ಯವಂತರಾಗಿದ್ದರೆ (ಸತ್ತು ಹೋದ) ನಮ್ಮ ಪೂರ್ವಜರನ್ನು ಕರೆದುಕೊಂಡು ಬನ್ನಿ.” | فَأْتُوا۟ بِـَٔابَآئِنَآ إِن كُنتُمْ صَٰدِقِينَ ﴿٣٦﴾ |
| 37. | ಇವರು ಶ್ರೇಷ್ಠರೋ? ಅಥವಾ ತುಬ್ಬಅ್‌ನ ಜನರು[1] ಮತ್ತು ಅವರಿಗಿಂತ ಮೊದಲಿನವರೋ? ನಾವು ಅವರೆಲ್ಲರನ್ನು ನಾಶ ಮಾಡಿದೆವು. ನಿಶ್ಚಯವಾಗಿಯೂ ಅವರು ಅಪರಾಧಿಗಳಾಗಿದ್ದರು. | أَهُمْ خَيْرٌ أَمْ قَوْمُ تُبَّعٍ وَٱلَّذِينَ مِن قَبْلِهِمْ أَهْلَكْنَٰهُمْ ۖ إِنَّهُمْ كَانُوا۟ مُجْرِمِينَ ﴿٣٧﴾ |
| 38. | ನಾವು ಭೂಮ್ಯಾಕಾಶಗಳನ್ನು ಮತ್ತು ಅವುಗಳ ನಡುವೆಯಿರುವ ವಸ್ತುಗಳನ್ನು ಆಟಕ್ಕಾಗಿ ಸೃಷ್ಟಿಸಿಲ್ಲ. | وَمَا خَلَقْنَا ٱلسَّمَٰوَٰتِ وَٱلْأَرْضَ وَمَا بَيْنَهُمَا لَٰعِبِينَ ﴿٣٨﴾ |
| 39. | ನಾವು ಅವುಗಳನ್ನು ಸರಿಯಾದ ಉದ್ದೇಶದಿಂದಲೇ ಸೃಷ್ಟಿಸಿದ್ದೇವೆ. ಆದರೆ ಅವರಲ್ಲಿ ಹೆಚ್ಚಿನವರು ತಿಳಿಯುವುದಿಲ್ಲ. | مَا خَلَقْنَٰهُمَآ إِلَّا بِٱلْحَقِّ وَلَٰكِنَّ أَكْثَرَهُمْ لَا يَعْلَمُونَ ﴿٣٩﴾ |
| 40. | ನಿಶ್ಚಯವಾಗಿಯೂ ತೀರ್ಪು ನೀಡುವ ದಿನವು ಅವರೆಲ್ಲರಿಗೂ ನಿಶ್ಚಯಿಸಲಾದ ದಿನವಾಗಿದೆ. | إِنَّ يَوْمَ ٱلْفَصْلِ مِيقَٰتُهُمْ أَجْمَعِينَ ﴿٤٠﴾ |
| 41. | ಅಂದು ಒಬ್ಬ ಗೆಳೆಯ ಇನ್ನೊಬ್ಬ ಗೆಳೆಯನಿಗೆ ಯಾವುದೇ ಉಪಕಾರ ಮಾಡುವುದಿಲ್ಲ. ಅವರಿಗೆ ಸಹಾಯವೂ ದೊರೆಯುವುದಿಲ್ಲ. | يَوْمَ لَا يُغْنِى مَوْلًى عَن مَّوْلًى شَيْـًٔا وَلَا هُمْ يُنصَرُونَ ﴿٤١﴾ |
| 42. | ಅಲ್ಲಾಹು ದಯೆ ತೋರಿದವರ ಹೊರತು. ನಿಶ್ಚಯವಾಗಿಯೂ ಅವನು ಪ್ರಬಲನು ಮತ್ತು ದಯೆ ತೋರುವವನಾಗಿದ್ದಾನೆ. | إِلَّا مَن رَّحِمَ ٱللَّهُ ۚ إِنَّهُۥ هُوَ ٱلْعَزِيزُ ٱلرَّحِيمُ ﴿٤٢﴾ |
| 43. | ನಿಶ್ಚಯವಾಗಿಯೂ ಝಕ್ಕೂಮ್ ಮರವು, | إِنَّ شَجَرَتَ ٱلزَّقُّومِ ﴿٤٣﴾ |
| 44. | ಪಾಪಿಗಳ ಆಹಾರವಾಗಿದೆ. | طَعَامُ ٱلْأَثِيمِ ﴿٤٤﴾ |
| 45. | ಅದು ಕಾಯಿಸಿದ ಲೋಹದಂತಿದೆ. ಅದು ಹೊಟ್ಟೆಯಲ್ಲಿ ಕುದಿಯುತ್ತದೆ. | كَٱلْمُهْلِ يَغْلِى فِى ٱلْبُطُونِ ﴿٤٥﴾ |
| 46. | ಬಿಸಿ ನೀರು ಕುದಿಯುವಂತೆ. | كَغَلْىِ ٱلْحَمِيمِ ﴿٤٦﴾ |
| 47. | “ಅವನನ್ನು ಹಿಡಿಯಿರಿ ಮತ್ತು ನರಕಾಗ್ನಿಯ ಮಧ್ಯಭಾಗಕ್ಕೆ ಎಳೆದೊಯ್ಯಿರಿ! | خُذُوهُ فَٱعْتِلُوهُ إِلَىٰ سَوَآءِ ٱلْجَحِيمِ ﴿٤٧﴾ |
| 48. | ನಂತರ ಅವನ ತಲೆಯ ಮೇಲೆ ಕುದಿಯುವ ನೀರಿನ ಶಿಕ್ಷೆಯನ್ನು ಸುರಿಯಿರಿ!” | ثُمَّ صُبُّوا۟ فَوْقَ رَأْسِهِۦ مِنْ عَذَابِ ٱلْحَمِيمِ ﴿٤٨﴾ |
| 49. | (ಅವನೊಡನೆ ಹೇಳಲಾಗುವುದು): “ಇದರ ರುಚಿ ನೋಡು! | ذُقْ إِنَّكَ أَنتَ ٱلْعَزِيزُ ٱلْكَرِيمُ ﴿٤٩﴾ |

[1] ತುಬ್ಬಅ್ ಎಂದರೆ ಹಳೆಯ ಸಬಾ ಸಾಮ್ರಾಜ್ಯಕ್ಕೆ ಸೇರಿದ ಹಿಮ್ಯರ್ ಗೋತ್ರದ ಆಡಳಿತಗಾರರು.

| | | |
|---|---|---|
| | ನಿಶ್ಚಯವಾಗಿಯೂ ನೀನು ಪ್ರಬಲನು ಮತ್ತು ಗೌರವಾನ್ವಿತನಾಗಿದ್ದೆ! | |
| 50. | ನಿಶ್ಚಯವಾಗಿಯೂ ಇದು ನೀವು ಸಂಶಯಪಡುತ್ತಿದ್ದ ವಿಷಯವಾಗಿದೆ.” | إِنَّ هَٰذَا مَا كُنتُم بِهِۦ تَمۡتَرُونَ ٥٠ |
| 51. | ನಿಶ್ಚಯವಾಗಿಯೂ ದೇವಭಯವುಳ್ಳವರು ನಿರ್ಭಯ ಸ್ಥಳದಲ್ಲಿರುವರು. | إِنَّ ٱلۡمُتَّقِينَ فِي مَقَامٍ أَمِينٖ ٥١ |
| 52. | ತೋಟಗಳಲ್ಲಿ ಮತ್ತು ತೊರೆಗಳಲ್ಲಿ. | فِي جَنَّٰتٖ وَعُيُونٖ ٥٢ |
| 53. | ನಯ ಮತ್ತು ದಪ್ಪ ರೇಷ್ಮೆ ಉಡುಪುಗಳನ್ನು ಧರಿಸಿ, ಪರಸ್ಪರ ಎದುರು-ಬದುರು ಕುಳಿತಿರುವರು. | يَلۡبَسُونَ مِن سُندُسٖ وَإِسۡتَبۡرَقٖ مُّتَقَٰبِلِينَ ٥٣ |
| 54. | (ಅವರ ಸ್ಥಿತಿ) ಈ ರೀತಿಯಾಗಿದೆ. ನಾವು ಅರಳಿದ ಕಣ್ಣುಗಳ ಬೆಳ್ಳಗಿನ ಸ್ತ್ರೀಯರನ್ನು ಅವರಿಗೆ ವಿವಾಹ ಮಾಡಿಕೊಡುವೆವು. | كَذَٰلِكَ وَزَوَّجۡنَٰهُم بِحُورٍ عِينٖ ٥٤ |
| 55. | ಅವರು ನಿರ್ಭಯ ಸ್ಥಿತಿಯಲ್ಲಿದ್ದು ಎಲ್ಲ ತರಹದ ಹಣ್ಣುಗಳನ್ನು ಬೇಡುವರು. | يَدۡعُونَ فِيهَا بِكُلِّ فَٰكِهَةٍ ءَامِنِينَ ٥٥ |
| 56. | ಅವರು ಮೊದಲನೆಯ ಮರಣದ ಹೊರತು ಬೇರೊಂದು ಮರಣದ ರುಚಿಯನ್ನು ನೋಡುವುದಿಲ್ಲ. ಅವನು ಅವರನ್ನು ನರಕ ಶಿಕ್ಷೆಯಿಂದ ಪಾರು ಮಾಡುವನು. | لَا يَذُوقُونَ فِيهَا ٱلۡمَوۡتَ إِلَّا ٱلۡمَوۡتَةَ ٱلۡأُولَىٰۖ وَوَقَىٰهُمۡ عَذَابَ ٱلۡجَحِيمِ ٥٦ |
| 57. | ಇದು ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಔದಾರ್ಯವಾಗಿದೆ. ಇದೇ ಮಹಾ ಯಶಸ್ಸು. | فَضۡلٗا مِّن رَّبِّكَۚ ذَٰلِكَ هُوَ ٱلۡفَوۡزُ ٱلۡعَظِيمُ ٥٧ |
| 58. | ಅವರು ಉಪದೇಶವನ್ನು ಪಡೆಯುವುದಕ್ಕಾಗಿ ನಾವು ಇದನ್ನು (ಕುರ್‌ಆನನ್ನು) ನಿಮ್ಮ ಭಾಷೆಯಲ್ಲಿ ಸರಳಗೊಳಿಸಿದ್ದೇವೆ. | فَإِنَّمَا يَسَّرۡنَٰهُ بِلِسَانِكَ لَعَلَّهُمۡ يَتَذَكَّرُونَ ٥٨ |
| 59. | ನೀವು ಕಾಯಿರಿ. ಅವರು ಕೂಡ ಕಾಯುತ್ತಿದ್ದಾರೆ. | فَٱرۡتَقِبۡ إِنَّهُم مُّرۡتَقِبُونَ ٥٩ |

# 45. ಅಲ್-ಜಾಸಿಯ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಹಾ-ಮೀಮ್.

حمٓ ١

2. ಈ ಗ್ರಂಥವು ಪ್ರಬಲನು ಮತ್ತು ವಿವೇಕಪೂರ್ಣನಾದ ಅಲ್ಲಾಹನಿಂದ ಅವತೀರ್ಣವಾಗಿದೆ.

تَنزِيلُ ٱلۡكِتَٰبِ مِنَ ٱللَّهِ ٱلۡعَزِيزِ ٱلۡحَكِيمِ ٢

3. ನಿಶ್ಚಯವಾಗಿಯೂ ಭೂಮ್ಯಾಕಾಶಗಳಲ್ಲಿ ಸತ್ಯವಿಶ್ವಾಸಿಗಳಿಗೆ ಅನೇಕ ದೃಷ್ಟಾಂತಗಳಿವೆ.

إِنَّ فِي ٱلسَّمَٰوَٰتِ وَٱلۡأَرۡضِ لَأٓيَٰتٖ لِّلۡمُؤۡمِنِينَ ٣

4. ನಿಮ್ಮ ಸೃಷ್ಟಿಯಲ್ಲೂ ಮತ್ತು ಅವನು ಜೀವಿಗಳನ್ನು ಹಬ್ಬಿಸಿರುವುದರಲ್ಲೂ ದೃಢವಿಶ್ವಾಸವಿಡುವ ಜನರಿಗೆ ಅನೇಕ ದೃಷ್ಟಾಂತಗಳಿವೆ.

وَفِي خَلۡقِكُمۡ وَمَا يَبُثُّ مِن دَآبَّةٍ ءَايَٰتٞ لِّقَوۡمٖ يُوقِنُونَ ٤

5. ರಾತ್ರಿ-ಹಗಲುಗಳ ಬದಲಾವಣೆಯಲ್ಲಿ, ಅಲ್ಲಾಹು ಆಕಾಶದಿಂದ ಆಹಾರವನ್ನು (ಮಳೆಯನ್ನು) ಇಳಿಸಿ ತನ್ಮೂಲಕ ಭೂಮಿಗೆ ಅದು ನಿರ್ಜೀವವಾದ ಬಳಿಕ ಜೀವ ನೀಡುವುದರಲ್ಲಿ ಮತ್ತು ಗಾಳಿಯ ನಿಯಂತ್ರಣದಲ್ಲಿ ಆಲೋಚಿಸುವ ಜನರಿಗೆ ಅನೇಕ ದೃಷ್ಟಾಂತಗಳಿವೆ.

وَٱخۡتِلَٰفِ ٱلَّيۡلِ وَٱلنَّهَارِ وَمَآ أَنزَلَ ٱللَّهُ مِنَ ٱلسَّمَآءِ مِن رِّزۡقٖ فَأَحۡيَا بِهِ ٱلۡأَرۡضَ بَعۡدَ مَوۡتِهَا وَتَصۡرِيفِ ٱلرِّيَٰحِ ءَايَٰتٞ لِّقَوۡمٖ يَعۡقِلُونَ ٥

6. ಇವು ಅಲ್ಲಾಹನ ವಚನಗಳಾಗಿದ್ದು, ನಾವು ಅವುಗಳನ್ನು ನಿಮಗೆ ಸತ್ಯ ಸಮೇತವಾಗಿ ಓದಿಕೊಡುತ್ತಿದ್ದೇವೆ. ಅಲ್ಲಾಹು ಮತ್ತು ಅವನ ವಚನಗಳ ನಂತರ ಇನ್ನು ಯಾವ ಮಾತಿನಲ್ಲಿ ಅವರು ವಿಶ್ವಾಸವಿಡುವರು?

تِلۡكَ ءَايَٰتُ ٱللَّهِ نَتۡلُوهَا عَلَيۡكَ بِٱلۡحَقِّۖ فَبِأَيِّ حَدِيثِۭ بَعۡدَ ٱللَّهِ وَءَايَٰتِهِۦ يُؤۡمِنُونَ ٦

7. ಪ್ರತಿಯೊಬ್ಬ ಸುಳ್ಳುಗಾರ ಮತ್ತು ಪಾಪಿಗೆ ವಿನಾಶ ಕಾದಿದೆ.

وَيۡلٞ لِّكُلِّ أَفَّاكٍ أَثِيمٖ ٧

8. ತನಗೆ ಓದಿಕೊಡಲಾಗುವ ಅಲ್ಲಾಹನ ವಚನಗಳಿಗೆ ಅವನು ಕಿವಿಗೊಡುತ್ತಾನೆ. ನಂತರ ಅದನ್ನು ಕೇಳಿಯೇ ಇಲ್ಲ ಎಂಬಂತೆ ಅಹಂಕಾರದಿಂದ ಹಟತೊಟ್ಟು ನಿಲ್ಲುತ್ತಾನೆ. ಅವನಿಗೆ ಯಾತನಾಮಯ ಶಿಕ್ಷೆಯ ಬಗ್ಗೆ ಸುವಾರ್ತೆಯನ್ನು ತಿಳಿಸಿರಿ.

يَسۡمَعُ ءَايَٰتِ ٱللَّهِ تُتۡلَىٰ عَلَيۡهِ ثُمَّ يُصِرُّ مُسۡتَكۡبِرٗا كَأَن لَّمۡ يَسۡمَعۡهَاۖ فَبَشِّرۡهُ بِعَذَابٍ أَلِيمٖ ٨

9. ಅವನು ನಮ್ಮ ವಚನಗಳಿಂದ ಏನಾದರೂ ತಿಳಿದುಕೊಂಡರೆ ಅದನ್ನು ತಮಾಷೆಯಾಗಿ ಸ್ವೀಕರಿಸುತ್ತಾನೆ. ಅಂತಹ ಜನರಿಗೆ ಅವಮಾನಕರ ಶಿಕ್ಷೆಯಿದೆ.

وَإِذَا عَلِمَ مِنۡ ءَايَٰتِنَا شَيۡـًٔا ٱتَّخَذَهَا هُزُوًاۚ أُوْلَٰٓئِكَ لَهُمۡ عَذَابٞ مُّهِينٞ ٩

10. ನರಕಾಗ್ನಿ ಅವರ ಮುಂಭಾಗದಲ್ಲೇ ಇದೆ! ಅವರು ಏನು ಸಂಪಾದಿಸಿದರೋ ಮತ್ತು ಅವರು ಅಲ್ಲಾಹನನ್ನು ಬಿಟ್ಟು

مِّن وَرَآئِهِمۡ جَهَنَّمُۖ وَلَا يُغۡنِي عَنۡهُم مَّا كَسَبُواْ شَيۡـٔٗا وَلَا مَا ٱتَّخَذُواْ مِن دُونِ ٱللَّهِ أَوۡلِيَآءَۖ وَلَهُمۡ

| | | |
|---|---|---|
| | ಯಾರನ್ನು ರಕ್ಷಕರನ್ನಾಗಿ ಸ್ವೀಕರಿಸಿದರೋ ಯಾವುದೂ ಅವರಿಗೆ ಪ್ರಯೋಜನ ನೀಡುವುದಿಲ್ಲ. ಅವರಿಗೆ ಕಠೋರ ಶಿಕ್ಷೆಯಿದೆ. | عَذَابٌ عَظِيمٌ ﴿١٠﴾ |
| 11. | ಇದು ಸನ್ಮಾರ್ಗವಾಗಿದೆ. ತಮ್ಮ ಪರಿಪಾಲಕನ (ಅಲ್ಲಾಹನ) ವಚನಗಳನ್ನು ನಿಷೇಧಿಸಿದವರು ಯಾರೋ ಅವರಿಗೆ ಬಹಳ ಕಠೋರವಾದ ಯಾತನಾಮಯ ಶಿಕ್ಷೆಯಿದೆ. | هَٰذَا هُدًىۖ وَٱلَّذِينَ كَفَرُواْ بِـَٔايَٰتِ رَبِّهِمۡ لَهُمۡ عَذَابٞ مِّن رِّجۡزٍ أَلِيمٌ ﴿١١﴾ |
| 12. | ಅಲ್ಲಾಹನೇ ನಿಮಗೆ ಸಮುದ್ರವನ್ನು ಅಧೀನಗೊಳಿಸಿದವನು. ಅವನ ಅಪ್ಪಣೆಯಂತೆ ನಾವೆಗಳು ಅದರಲ್ಲಿ ಸಂಚರಿಸುವುದಕ್ಕಾಗಿ, ನೀವು ಅವನ ಔದಾರ್ಯದಿಂದ ಬೇಡಿಕೊಳ್ಳುವುದಕ್ಕಾಗಿ ಮತ್ತು ನೀವು ಕೃತಜ್ಞರಾಗುವುದಕ್ಕಾಗಿ. | ۞ٱللَّهُ ٱلَّذِي سَخَّرَ لَكُمُ ٱلۡبَحۡرَ لِتَجۡرِيَ ٱلۡفُلۡكُ فِيهِ بِأَمۡرِهِۦ وَلِتَبۡتَغُواْ مِن فَضۡلِهِۦ وَلَعَلَّكُمۡ تَشۡكُرُونَ ﴿١٢﴾ |
| 13. | ಭೂಮ್ಯಾಕಾಶಗಳಲ್ಲಿರುವ ಎಲ್ಲಾ ವಸ್ತುಗಳನ್ನು ಅವನು ತನ್ನ ವತಿಯಿಂದ ನಿಮಗೆ ಅಧೀನಗೊಳಿಸಿದ್ದಾನೆ. ನಿಶ್ಚಯವಾಗಿಯೂ ಆಲೋಚಿಸುವ ಜನರಿಗೆ ಅದರಲ್ಲಿ ಅನೇಕ ದೃಷ್ಟಾಂತಗಳಿವೆ. | وَسَخَّرَ لَكُم مَّا فِي ٱلسَّمَٰوَٰتِ وَمَا فِي ٱلۡأَرۡضِ جَمِيعٗا مِّنۡهُۚ إِنَّ فِي ذَٰلِكَ لَأٓيَٰتٖ لِّقَوۡمٖ يَتَفَكَّرُونَ ﴿١٣﴾ |
| 14. | ಅಲ್ಲಾಹನ ದಿನಗಳನ್ನು ನಿರೀಕ್ಷಿಸದ ಸತ್ಯನಿಷೇಧಿಗಳಿಗೆ ಅವರು ಕ್ಷಮಿಸಿ ಬಿಡಲಿ ಎಂದು ಸತ್ಯವಿಶ್ವಾಸಿಗಳೊಡನೆ ಹೇಳಿರಿ. ಇದು ಅಲ್ಲಾಹು ಆ ಜನರಿಗೆ ಅವರು ಮಾಡಿದ ಕರ್ಮಗಳ ಫಲವನ್ನು ನೀಡುವುದಕ್ಕಾಗಿ. | قُل لِّلَّذِينَ ءَامَنُواْ يَغۡفِرُواْ لِلَّذِينَ لَا يَرۡجُونَ أَيَّامَ ٱللَّهِ لِيَجۡزِيَ قَوۡمَۢا بِمَا كَانُواْ يَكۡسِبُونَ ﴿١٤﴾ |
| 15. | ಯಾರಾದರೂ ಒಳಿತು ಮಾಡಿದರೆ ಅದು ಅವನ ಒಳಿತಿಗೇ ಆಗಿದೆ. ಯಾರಾದರೂ ಕೆಡುಕು ಮಾಡಿದರೆ ಅದರ ಕೆಡುಕು ಅವನಿಗೇ ಆಗಿದೆ. ನಂತರ ನಿಮ್ಮ ಪರಿಪಾಲಕನ (ಅಲ್ಲಾಹನ) ಬಳಿಗೆ ನಿಮ್ಮನ್ನು ಮರಳಿಸಲಾಗುವುದು. | مَنۡ عَمِلَ صَٰلِحٗا فَلِنَفۡسِهِۦۖ وَمَنۡ أَسَآءَ فَعَلَيۡهَاۖ ثُمَّ إِلَىٰ رَبِّكُمۡ تُرۡجَعُونَ ﴿١٥﴾ |
| 16. | ನಾವು ಇಸ್ರಾಯೇಲ್ ಮಕ್ಕಳಿಗೆ ಗ್ರಂಥ, ಜ್ಞಾನ ಮತ್ತು ಪ್ರವಾದಿತ್ವ-ವನ್ನು ನೀಡಿದೆವು, ಶುದ್ಧ ವಸ್ತುಗಳಿಂದ ಅವರಿಗೆ ಆಹಾರವನ್ನು ಒದಗಿಸಿದೆವು ಮತ್ತು ಜಗತ್ತಿನ ಎಲ್ಲಾ (ಸಮಕಾಲೀನ) ಜನರಿಗಿಂತ ನಾವು ಅವರಿಗೆ ಶ್ರೇಷ್ಠತೆಯನ್ನು ನೀಡಿದೆವು. | وَلَقَدۡ ءَاتَيۡنَا بَنِيٓ إِسۡرَٰٓءِيلَ ٱلۡكِتَٰبَ وَٱلۡحُكۡمَ وَٱلنُّبُوَّةَ وَرَزَقۡنَٰهُم مِّنَ ٱلطَّيِّبَٰتِ وَفَضَّلۡنَٰهُمۡ عَلَى ٱلۡعَٰلَمِينَ ﴿١٦﴾ |
| 17. | ನಾವು ಅವರಿಗೆ (ಧಾರ್ಮಿಕ) ವಿಷಯಗಳ ಬಗ್ಗೆ ಸ್ಪಷ್ಟ ಪುರಾವೆಗಳನ್ನು ನೀಡಿದೆವು. ಆದರೆ ಅವರಿಗೆ ಜ್ಞಾನವು ಬಂದ ಬಳಿಕವೇ ಹೊರತು ಅವರು ಭಿನ್ನಮತ ತಳೆಯಲಿಲ್ಲ. ಅವರು ಪರಸ್ಪರ ಹೊಂದಿದ್ದ ದ್ವೇಷವೇ ಅದಕ್ಕೆ ಕಾರಣವಾಗಿತ್ತು. ನಿಶ್ಚಯವಾಗಿಯೂ ಯಾವ ವಿಷಯದಲ್ಲಿ ಅವರು ಭಿನ್ನಮತ ತಳೆದರೋ ಆ ವಿಷಯದಲ್ಲಿ ಪುನರುತ್ಥಾನ ದಿನದಂದು ನಿಮ್ಮ ಪರಿಪಾಲಕನು (ಅಲ್ಲಾಹು) ಅವರ ನಡುವೆ ತೀರ್ಪು ನೀಡುವನು. | وَءَاتَيۡنَٰهُم بَيِّنَٰتٖ مِّنَ ٱلۡأَمۡرِۖ فَمَا ٱخۡتَلَفُوٓاْ إِلَّا مِنۢ بَعۡدِ مَا جَآءَهُمُ ٱلۡعِلۡمُ بَغۡيَۢا بَيۡنَهُمۡۚ إِنَّ رَبَّكَ يَقۡضِي بَيۡنَهُمۡ يَوۡمَ ٱلۡقِيَٰمَةِ فِيمَا كَانُواْ فِيهِ يَخۡتَلِفُونَ ﴿١٧﴾ |

18. ನಂತರ ನಾವು ನಿಮ್ಮನ್ನು ಧರ್ಮದ ಸ್ಪಷ್ಟ ಮಾರ್ಗದಲ್ಲಿ ನಿಲ್ಲಿಸಿದೆವು. ಆದ್ದರಿಂದ ನೀವು ಅದನ್ನು ಅನುಸರಿಸಿರಿ. ತಿಳುವಳಿಕೆ-ಯಿಲ್ಲದ ಜನರ ಸ್ವೇಚ್ಛೆಗಳನ್ನು ಅನುಸರಿಸಬೇಡಿ.

ثُمَّ جَعَلۡنَٰكَ عَلَىٰ شَرِيعَةٖ مِّنَ ٱلۡأَمۡرِ فَٱتَّبِعۡهَا وَلَا تَتَّبِعۡ أَهۡوَآءَ ٱلَّذِينَ لَا يَعۡلَمُونَ ١٨

19. ಅಲ್ಲಾಹನ ಮುಂದೆ ಇವರು ಯಾವ ರೀತಿಯಲ್ಲೂ ನಿಮಗೆ ಉಪಕಾರ ಮಾಡುವುದಿಲ್ಲ. ನಿಶ್ಚಯವಾಗಿಯೂ ಅಕ್ರಮಿಗಳು ಪರಸ್ಪರ ಮಿತ್ರರಾಗಿದ್ದಾರೆ. ಅಲ್ಲಾಹು ದೇವಭಯವುಳ್ಳವರ ರಕ್ಷಕನಾಗಿದ್ದಾನೆ.

إِنَّهُمۡ لَن يُغۡنُواْ عَنكَ مِنَ ٱللَّهِ شَيۡـٔٗاۚ وَإِنَّ ٱلظَّٰلِمِينَ بَعۡضُهُمۡ أَوۡلِيَآءُ بَعۡضٖۖ وَٱللَّهُ وَلِيُّ ٱلۡمُتَّقِينَ ١٩

20. ಇದು (ಕುರ್‌ಆನ್) ಮನುಷ್ಯರಿಗೆ ಒಳದೃಷ್ಟಿಯಾಗಿದೆ ಮತ್ತು ದೃಢವಿಶ್ವಾಸವಿಡುವ ಜನರಿಗೆ ಸನ್ಮಾರ್ಗ ಹಾಗೂ ದಯೆಯಾಗಿದೆ.

هَٰذَا بَصَٰٓئِرُ لِلنَّاسِ وَهُدٗى وَرَحۡمَةٞ لِّقَوۡمٖ يُوقِنُونَ ٢٠

21. ಕೆಡುಕು ಮಾಡಿದವರು ಯಾರೋ ಅವರನ್ನು ನಾವು ಸತ್ಯ-ವಿಶ್ವಾಸಿಗಳಾಗಿದ್ದು ಸತ್ಕರ್ಮವೆಸಗುವವರಂತೆ—ಅವರಿಬ್ಬರ ಜೀವನ ಮತ್ತು ಮರಣಗಳು ಸಮಾನವಾಗುವ ರೀತಿಯಲ್ಲಿ—ಮಾಡುವೆವೆಂದು ಭಾವಿಸಿದ್ದಾರೆಯೇ? ಅವರು ನೀಡುವ ತೀರ್ಪು ಬಹಳ ನಿಕೃಷ್ಟವಾಗಿದೆ.

أَمۡ حَسِبَ ٱلَّذِينَ ٱجۡتَرَحُواْ ٱلسَّيِّـَٔاتِ أَن نَّجۡعَلَهُمۡ كَٱلَّذِينَ ءَامَنُواْ وَعَمِلُواْ ٱلصَّٰلِحَٰتِ سَوَآءٗ مَّحۡيَاهُمۡ وَمَمَاتُهُمۡۚ سَآءَ مَا يَحۡكُمُونَ ٢١

22. ಅಲ್ಲಾಹು ಭೂಮ್ಯಾಕಾಶಗಳನ್ನು ಸತ್ಯ ಸಮೇತ ಸೃಷ್ಟಿಸಿದ್ದಾನೆ. ಪ್ರತಿಯೊಬ್ಬನಿಗೂ ಅವನು ಮಾಡಿದ ಕರ್ಮಗಳ ಪ್ರತಿಫಲವನ್ನು ನೀಡುವುದಕ್ಕಾಗಿ. ಅವರಿಗೆ ಯಾವುದೇ ಅನ್ಯಾಯವಾಗುವುದಿಲ್ಲ.

وَخَلَقَ ٱللَّهُ ٱلسَّمَٰوَٰتِ وَٱلۡأَرۡضَ بِٱلۡحَقِّ وَلِتُجۡزَىٰ كُلُّ نَفۡسِۭ بِمَا كَسَبَتۡ وَهُمۡ لَا يُظۡلَمُونَ ٢٢

23. ತನ್ನ ಸ್ವೇಚ್ಛೆಯನ್ನೇ ದೇವನನ್ನಾಗಿ ಮಾಡಿಕೊಂಡವನನ್ನು ನೀವು ನೋಡಿದ್ದೀರಾ?[1] ಅಲ್ಲಾಹು ತಿಳಿದೇ ಅವನನ್ನು ದಾರಿತಪ್ಪಿಸಿದ್ದಾನೆ, ಅವನ ಕಿವಿ ಮತ್ತು ಹೃದಯಕ್ಕೆ ಮೊಹರು ಹಾಕಿದ್ದಾನೆ ಮತ್ತು ಅವನ ಕಣ್ಣಿನ ಮೇಲೆ ಒಂದು ಪರದೆಯನ್ನಿಟ್ಟಿದ್ದಾನೆ. ಅಲ್ಲಾಹನ ನಂತರ ಅವನಿಗೆ ಸನ್ಮಾರ್ಗ ತೋರಿಸುವವರು ಯಾರು? ನೀವು ಉಪದೇಶ ಸ್ವೀಕರಿಸುವುದಿಲ್ಲವೇ?

أَفَرَءَيۡتَ مَنِ ٱتَّخَذَ إِلَٰهَهُۥ هَوَىٰهُ وَأَضَلَّهُ ٱللَّهُ عَلَىٰ عِلۡمٖ وَخَتَمَ عَلَىٰ سَمۡعِهِۦ وَقَلۡبِهِۦ وَجَعَلَ عَلَىٰ بَصَرِهِۦ غِشَٰوَةٗ فَمَن يَهۡدِيهِ مِنۢ بَعۡدِ ٱللَّهِۚ أَفَلَا تَذَكَّرُونَ ٢٣

24. ಅವರು ಹೇಳಿದರು: "ಜೀವನವೆಂದರೆ ನಮ್ಮ ಇಹಲೋಕ ಜೀವನ ಮಾತ್ರವಾಗಿದೆ. ನಾವು ಸಾಯುತ್ತೇವೆ ಮತ್ತು ಬದುಕುತ್ತೇವೆ. ಕಾಲವಲ್ಲದೆ ಬೇರೇನೂ ನಮ್ಮನ್ನು ನಾಶ ಮಾಡುವುದಿಲ್ಲ." ವಾಸ್ತವವಾಗಿ ಅವರಿಗೆ ಅದರ ಬಗ್ಗೆ ಯಾವುದೇ ಜ್ಞಾನವಿಲ್ಲ. ಅವರು ಕೇವಲ ಊಹಿಸಿ ಹೇಳುತ್ತಾರೆ.

وَقَالُواْ مَا هِيَ إِلَّا حَيَاتُنَا ٱلدُّنۡيَا نَمُوتُ وَنَحۡيَا وَمَا يُهۡلِكُنَآ إِلَّا ٱلدَّهۡرُۚ وَمَا لَهُم بِذَٰلِكَ مِنۡ عِلۡمٍۖ إِنۡ هُمۡ إِلَّا يَظُنُّونَ ٢٤

---

[1] ಅಂದರೆ ಅವನಿಗೆ ಯಾವುದು ಒಳ್ಳೆಯದೆಂದು ಕಾಣುತ್ತದೆಯೋ ಅದನ್ನು ಒಳ್ಳೆಯದೆಂದು ತಿಳಿಯುತ್ತಾನೆ ಮತ್ತು ಅವನಿಗೆ ಯಾವುದು ಕೆಟ್ಟದೆಂದು ಕಾಣುತ್ತದೆಯೋ ಅದನ್ನು ಕೆಟ್ಟದೆಂದು ತಿಳಿಯುತ್ತಾನೆ. ಅಂದರೆ ಅವರು ಅಲ್ಲಾಹನ ಮತ್ತು ಅವನ ಪ್ರವಾದಿಯ ಆಜ್ಞೆಗಳಿ-ಗಿಂತಲೂ ತನ್ನ ಇಚ್ಛೆಗೆ ಪ್ರಾಮುಖ್ಯತೆ ನೀಡುತ್ತಾನೆ. ತನ್ನ ಬುದ್ಧಿಯನ್ನೇ ತನ್ನ ತೀರ್ಪುಗಾರನಾಗಿ ಮಾಡಿಕೊಳ್ಳುತ್ತಾನೆ.

25. ನಮ್ಮ ಸ್ಪಷ್ಟ ವಚನಗಳನ್ನು ಅವರಿಗೆ ಓದಿಕೊಡಲಾದರೆ ಅವರು ಹೇಳುವ ತರ್ಕವು: "ನೀವು ಸತ್ಯವಂತರಾಗಿದ್ದರೆ ನಮ್ಮ ಪೂರ್ವಜರನ್ನು ಕರೆತನ್ನಿರಿ" ಎಂದು ಮಾತ್ರವಾಗಿರುತ್ತದೆ.

وَإِذَا تُتۡلَىٰ عَلَيۡهِمۡ ءَايَٰتُنَا بَيِّنَٰتٖ مَّا كَانَ
حُجَّتَهُمۡ إِلَّآ أَن قَالُواْ ٱئۡتُواْ بِـَٔابَآئِنَآ إِن كُنتُمۡ
صَٰدِقِينَ ٢٥

26. ಹೇಳಿರಿ: "ಅಲ್ಲಾಹು ನಿಮಗೆ ಜೀವ ನೀಡುತ್ತಾನೆ. ನಂತರ ಅವನು ಸಾವನ್ನು ನೀಡುತ್ತಾನೆ. ನಂತರ ಪುನರುತ್ಥಾನ ದಿನದಂದು ಅವನು ನಿಮ್ಮನ್ನು ಒಟ್ಟುಗೂಡಿಸುತ್ತಾನೆ. ಅದರಲ್ಲಿ ಸಂಶಯವೇ ಇಲ್ಲ. ಆದರೆ ಜನರಲ್ಲಿ ಹೆಚ್ಚಿನವರು ಅರ್ಥಮಾಡಿಕೊಳ್ಳುವುದಿಲ್ಲ.

قُلِ ٱللَّهُ يُحۡيِيكُمۡ ثُمَّ يُمِيتُكُمۡ ثُمَّ يَجۡمَعُكُمۡ
إِلَىٰ يَوۡمِ ٱلۡقِيَٰمَةِ لَا رَيۡبَ فِيهِ وَلَٰكِنَّ أَكۡثَرَ
ٱلنَّاسِ لَا يَعۡلَمُونَ ٢٦

27. ಭೂಮ್ಯಾಕಾಶಗಳ ಸಾರ್ವಭೌಮತ್ವವು ಅಲ್ಲಾಹನಿಗೆ ಸೇರಿದ್ದು. ಅಂತ್ಯಸಮಯವು ಅಸ್ತಿತ್ವಕ್ಕೆ ಬರುವ ದಿನದಂದು ಮಿಥ್ಯವಾದಿಗಳು ನಷ್ಟ ಹೊಂದುವರು.

وَلِلَّهِ مُلۡكُ ٱلسَّمَٰوَٰتِ وَٱلۡأَرۡضِۚ وَيَوۡمَ تَقُومُ
ٱلسَّاعَةُ يَوۡمَئِذٖ يَخۡسَرُ ٱلۡمُبۡطِلُونَ ٢٧

28. (ಆ ದಿನ) ಎಲ್ಲ ಸಮುದಾಯಗಳನ್ನು ಮಂಡಿಯೂರಿದ ಸ್ಥಿತಿಯಲ್ಲಿ ನೀವು ನೋಡುವಿರಿ. ಪ್ರತಿಯೊಂದು ಸಮುದಾಯವನ್ನೂ ಅದರ ಕರ್ಮದಾಖಲೆಯ ಕಡೆಗೆ ಕರೆಯಲಾಗುವುದು. "ನೀವು ಮಾಡಿರುವ ಕರ್ಮಗಳಿಗೆ ಇಂದು ನಿಮಗೆ ಪ್ರತಿಫಲ ನೀಡಲಾಗುವುದು.

وَتَرَىٰ كُلَّ أُمَّةٖ جَاثِيَةٗۚ كُلُّ أُمَّةٖ تُدۡعَىٰٓ إِلَىٰ
كِتَٰبِهَا ٱلۡيَوۡمَ تُجۡزَوۡنَ مَا كُنتُمۡ تَعۡمَلُونَ ٢٨

29. ಇದು ನಮ್ಮ ದಾಖಲೆಯಾಗಿದ್ದು ಇದು ನಿಮ್ಮ ಬಗ್ಗೆ ಸತ್ಯವನ್ನು ಹೇಳಲಿದೆ. ನಿಶ್ಚಯವಾಗಿಯೂ ನೀವು ಮಾಡುತ್ತಿದ್ದ ಎಲ್ಲಾ ಕರ್ಮಗಳನ್ನು ನಾವು ದಾಖಲಿಸುತ್ತಿದ್ದೆವು."

هَٰذَا كِتَٰبُنَا يَنطِقُ عَلَيۡكُم بِٱلۡحَقِّۚ إِنَّا كُنَّا
نَسۡتَنسِخُ مَا كُنتُمۡ تَعۡمَلُونَ ٢٩

30. ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ ಅವರನ್ನು ಅವರ ಪರಿಪಾಲಕನು (ಅಲ್ಲಾಹು) ಅವನ ದಯೆಯಲ್ಲಿ ಸೇರಿಸುವನು. ಅದೇ ಸ್ಪಷ್ಟವಾದ ವಿಜಯ.

فَأَمَّا ٱلَّذِينَ ءَامَنُواْ وَعَمِلُواْ ٱلصَّٰلِحَٰتِ
فَيُدۡخِلُهُمۡ رَبُّهُمۡ فِي رَحۡمَتِهِۦۚ ذَٰلِكَ هُوَ ٱلۡفَوۡزُ
ٱلۡمُبِينُ ٣٠

31. ಸತ್ಯನಿಷೇಧಿಗಳು ಯಾರೋ (ಅವರೊಡನೆ ಹೇಳಲಾಗುವುದು:) "ನನ್ನ ವಚನಗಳನ್ನು ನಿಮಗೆ ಓದಿಕೊಡಲಾಗಿಲ್ಲವೇ? ಆದರೂ ನೀವು ಅಹಂಕಾರ ತೋರಿದಿರಿ ಮತ್ತು ಪಾಪಿಗಳಾದ ಜನರಾಗಿದ್ದಿರಿ.

وَأَمَّا ٱلَّذِينَ كَفَرُوٓاْ أَفَلَمۡ تَكُنۡ ءَايَٰتِي تُتۡلَىٰ
عَلَيۡكُمۡ فَٱسۡتَكۡبَرۡتُمۡ وَكُنتُمۡ قَوۡمٗا مُّجۡرِمِينَ ٣١

32. ನಿಶ್ಚಯವಾಗಿಯೂ ಅಲ್ಲಾಹನ ವಾಗ್ದಾನವು ಸತ್ಯವಾಗಿದೆ ಮತ್ತು ಅಂತ್ಯಸಮಯದ ವಿಷಯದಲ್ಲಿ ಯಾವುದೇ ಸಂಶಯವಿಲ್ಲ ಎಂದು ಹೇಳಲಾದರೆ, ಅಂತ್ಯಸಮಯವೇನೆಂದು ನಮಗೆ ತಿಳಿದಿಲ್ಲ. ನಮಗೆ ಕೆಲವು ಕಲ್ಪನೆಗಳಿದ್ದವು. ನಮಗೆ ಯಾವುದರ ಬಗ್ಗೆಯೂ ಖಾತ್ರಿಯಿರಲಿಲ್ಲ ಎಂದು ನೀವು ಉತ್ತರಿಸಿದಿರಿ."

وَإِذَا قِيلَ إِنَّ وَعۡدَ ٱللَّهِ حَقّٞ وَٱلسَّاعَةُ لَا رَيۡبَ
فِيهَا قُلۡتُم مَّا نَدۡرِي مَا ٱلسَّاعَةُ إِن نَّظُنُّ إِلَّا
ظَنّٗا وَمَا نَحۡنُ بِمُسۡتَيۡقِنِينَ ٣٢

| | | |
|---|---|---|
| 33. | ಅವರು ಮಾಡಿದ ಕರ್ಮಗಳ ಕೆಡುಕುಗಳು ಅವರಿಗೆ ಗೋಚರವಾಗುವುದು ಮತ್ತು ಅವರು ಏನನ್ನು ತಮಾಷೆ ಮಾಡುತ್ತಿದ್ದರೋ ಅದು ಅವರನ್ನು ಆವರಿಸುವುದು. | وَبَدَا لَهُمْ سَيِّـَٔاتُ مَا عَمِلُواْ وَحَاقَ بِهِم مَّا كَانُواْ بِهِۦ يَسْتَهْزِءُونَ ٣٣ |
| 34. | ಅವರೊಡನೆ ಹೇಳಲಾಗುವುದು: “ನಿಮ್ಮ ಈ ದಿನದ ಭೇಟಿಯನ್ನು ನೀವು ಮರೆತುಬಿಟ್ಟಂತೆ ಇಂದು ನಾವು ನಿಮ್ಮನ್ನೂ ಮರೆತಿದ್ದೇವೆ. ನಿಮ್ಮ ವಾಸಸ್ಥಳವು ನರಕವಾಗಿದೆ. ನಿಮಗೆ ಸಹಾಯ ಮಾಡುವವರು ಯಾರೂ ಇಲ್ಲ. | وَقِيلَ ٱلْيَوْمَ نَنسَىٰكُمْ كَمَا نَسِيتُمْ لِقَآءَ يَوْمِكُمْ هَٰذَا وَمَأْوَىٰكُمُ ٱلنَّارُ وَمَا لَكُم مِّن نَّٰصِرِينَ ٣٤ |
| 35. | ಅದೇಕೆಂದರೆ ನೀವು ಅಲ್ಲಾಹನ ವಚನಗಳನ್ನು ತಮಾಷೆಯ ವಸ್ತುವಾಗಿ ಸ್ವೀಕರಿಸಿದಿರಿ ಮತ್ತು ಇಹಲೋಕ ಜೀವನವು ನಿಮ್ಮನ್ನು ಮರುಳುಗೊಳಿಸಿತು. ಇಂದು ಅವರನ್ನು ಅಲ್ಲಿಂದ ಹೊರತೆಗೆಯ-ಲಾಗುವುದಿಲ್ಲ ಮತ್ತು ಅವರ ನೆಪಗಳನ್ನು ಸ್ವೀಕರಿಸಲಾಗುವುದಿಲ್ಲ. | ذَٰلِكُم بِأَنَّكُمُ ٱتَّخَذْتُمْ ءَايَٰتِ ٱللَّهِ هُزُوًا وَغَرَّتْكُمُ ٱلْحَيَوٰةُ ٱلدُّنْيَا ۚ فَٱلْيَوْمَ لَا يُخْرَجُونَ مِنْهَا وَلَا هُمْ يُسْتَعْتَبُونَ ٣٥ |
| 36. | ಆದ್ದರಿಂದ ಭೂಮ್ಯಾಕಾಶಗಳ ಪರಿಪಾಲಕನಾದ ಮತ್ತು ಸರ್ವಲೋಕಗಳ ಪರಿಪಾಲಕನಾದ ಅಲ್ಲಾಹನಿಗೆ ಸರ್ವಸ್ತುತಿ. | فَلِلَّهِ ٱلْحَمْدُ رَبِّ ٱلسَّمَٰوَٰتِ وَرَبِّ ٱلْأَرْضِ رَبِّ ٱلْعَٰلَمِينَ ٣٦ |
| 37. | ಭೂಮ್ಯಾಕಾಶಗಳಲ್ಲಿ ಎಲ್ಲಾ ಮಹಾತ್ಮೆಗಳು ಅವನಿಗೇ ಮೀಸಲು. ಅವನು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ. | وَلَهُ ٱلْكِبْرِيَآءُ فِى ٱلسَّمَٰوَٰتِ وَٱلْأَرْضِ ۖ وَهُوَ ٱلْعَزِيزُ ٱلْحَكِيمُ ٣٧ |

# 46. ಅಲ್-ಅಹ್ಕಾಫ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ — بِسْمِ ٱللَّهِ ٱلرَّحْمَٰنِ ٱلرَّحِيمِ

| | | |
|---|---|---|
| 1. | ಹಾ-ಮೀಮ್. | حمٓ ١ |
| 2. | ಈ ಗ್ರಂಥವು ಪ್ರಬಲನು ಮತ್ತು ವಿವೇಕಪೂರ್ಣನಾದ ಅಲ್ಲಾಹನಿಂದ ಅವತೀರ್ಣವಾಗಿದೆ. | تَنزِيلُ ٱلْكِتَٰبِ مِنَ ٱللَّهِ ٱلْعَزِيزِ ٱلْحَكِيمِ ٢ |
| 3. | ನಾವು ಭೂಮ್ಯಾಕಾಶಗಳನ್ನು ಮತ್ತು ಅವುಗಳ ನಡುವೆಯಿರುವ ಎಲ್ಲಾ ವಸ್ತುಗಳನ್ನು ಸತ್ಯ ಸಮೇತವಾಗಿ ಮತ್ತು ಒಂದು ನಿಶ್ಚಿತ ಅವಧಿಗಾಗಿ ಮಾತ್ರ ಸೃಷ್ಟಿಸಿದ್ದೇವೆ. ಸತ್ಯನಿಷೇಧಿಗಳು ಅವರಿಗೆ ನೀಡಲಾಗುತ್ತಿರುವ ಎಚ್ಚರಿಕೆಯನ್ನು ಕಡೆಗಣಿಸಿ ವಿಮುಖರಾಗುತ್ತಿದ್ದಾರೆ. | مَا خَلَقْنَا ٱلسَّمَٰوَٰتِ وَٱلْأَرْضَ وَمَا بَيْنَهُمَآ إِلَّا بِٱلْحَقِّ وَأَجَلٍ مُّسَمًّى ۚ وَٱلَّذِينَ كَفَرُواْ عَمَّآ أُنذِرُواْ مُعْرِضُونَ ٣ |
| 4. | ಹೇಳಿರಿ: “ಅಲ್ಲಾಹನನ್ನು ಬಿಟ್ಟು ನೀವು ಕರೆದು ಪ್ರಾರ್ಥಿಸುತ್ತಿ-ರುವವರ ಬಗ್ಗೆ ನೀವು ಆಲೋಚಿಸಿ ನೋಡಿದ್ದೀರಾ? ಅವರು ಭೂಮಿಯಲ್ಲಿ ಏನು ಸೃಷ್ಟಿಸಿದ್ದಾರೆಂದು ನನಗೆ ತೋರಿಸಿಕೊಡಿ. | قُلْ أَرَءَيْتُم مَّا تَدْعُونَ مِن دُونِ ٱللَّهِ أَرُونِى مَاذَا خَلَقُواْ مِنَ ٱلْأَرْضِ أَمْ لَهُمْ شِرْكٌ فِى ٱلسَّمَٰوَٰتِ ۖ ٱئْتُونِى بِكِتَٰبٍ مِّن قَبْلِ هَٰذَآ أَوْ |

ಅಥವಾ ಆಕಾಶಗಳ ಸೃಷ್ಟಿಯಲ್ಲಿ ಅವರಿಗೆ ಏನಾದರೂ ಪಾಲುದಾರಿಕೆಯಿದೆಯೇ? ನೀವು ಸತ್ಯವಂತರಾಗಿದ್ದರೆ ಇದಕ್ಕಿಂತ ಮೊದಲಿನ ಯಾವುದಾದರೂ ಗ್ರಂಥವನ್ನು ಅಥವಾ ಜ್ಞಾನದ ಅವಶೇಷವನ್ನು ನನಗೆ ತಂದು ತೋರಿಸಿ.”

أَثَٰرَةٖ مِّنۡ عِلۡمٍ إِن كُنتُمۡ صَٰدِقِينَ ٤

---

5. ಅಲ್ಲಾಹನನ್ನು ಬಿಟ್ಟು, ಪುನರುತ್ಥಾನ ದಿನದವರೆಗೆ ತನಗೆ ಉತ್ತರ ನೀಡದ ದೇವರುಗಳನ್ನು ಕರೆದು ಪ್ರಾರ್ಥಿಸುವವನಿಗಿಂತಲೂ ಹೆಚ್ಚು ದಾರಿತಪ್ಪಿದವನು ಯಾರು? ಅವರಿಗೆ ಇವರ ಪ್ರಾರ್ಥನೆಯ ಬಗ್ಗೆ ಯಾವುದೇ ಅರಿವಿಲ್ಲ.

وَمَنۡ أَضَلُّ مِمَّن يَدۡعُواْ مِن دُونِ ٱللَّهِ مَن لَّا يَسۡتَجِيبُ لَهُۥٓ إِلَىٰ يَوۡمِ ٱلۡقِيَٰمَةِ وَهُمۡ عَن دُعَآئِهِمۡ غَٰفِلُونَ ٥

---

6. ಜನರನ್ನು ಒಟ್ಟುಗೂಡಿಸಲಾಗುವಾಗ ಅವರು ಇವರಿಗೆ ವೈರಿಗಳಾಗುವರು ಮತ್ತು ಇವರು ಮಾಡಿದ ಆರಾಧನೆಗಳನ್ನು ನಿಷೇಧಿಸುವರು.

وَإِذَا حُشِرَ ٱلنَّاسُ كَانُواْ لَهُمۡ أَعۡدَآءٗ وَكَانُواْ بِعِبَادَتِهِمۡ كَٰفِرِينَ ٦

---

7. ಅವರಿಗೆ ನಮ್ಮ ಸ್ಪಷ್ಟ ವಚನಗಳನ್ನು ಓದಿಕೊಡಲಾದರೆ, ಆ ಸತ್ಯನಿಷೇಧಿಗಳು ಸತ್ಯವು ಅವರ ಬಳಿಗೆ ಬಂದಾಗ ಅದರ ಬಗ್ಗೆ ಹೇಳುವರು: “ಇದೊಂದು ಸ್ಪಷ್ಟ ಮಾಟಗಾರಿಕೆಯಾಗಿದೆ.”

وَإِذَا تُتۡلَىٰ عَلَيۡهِمۡ ءَايَٰتُنَا بَيِّنَٰتٖ قَالَ ٱلَّذِينَ كَفَرُواْ لِلۡحَقِّ لَمَّا جَآءَهُمۡ هَٰذَا سِحۡرٞ مُّبِينٌ ٧

---

8. ಅದನ್ನು ಅವರು (ಪ್ರವಾದಿ) ಸ್ವಯಂ ರಚಿಸಿದರು ಎಂದು ಅವರು ಹೇಳುತ್ತಿದ್ದಾರೆಯೇ? ಹೇಳಿರಿ: “ಅದನ್ನು ನಾನೇ ಸ್ವಯಂ ರಚಿಸಿದ್ದರೆ ಅಲ್ಲಾಹನ ಶಿಕ್ಷೆಯಿಂದ ನನ್ನನ್ನು ರಕ್ಷಿಸಲು ನಿಮಗೆ ಸಾಧ್ಯವಿಲ್ಲ. ನೀವು ಅದರ (ಕುರ್‌ಆನಿನ) ಬಗ್ಗೆ ಏನು ಮಾತನಾಡುತ್ತಿದ್ದೀರೋ ಅದನ್ನು ಅವನು ಬಹಳ ಚೆನ್ನಾಗಿ ತಿಳಿದಿದ್ದಾನೆ. ನನ್ನ ಮತ್ತು ನಿಮ್ಮ ನಡುವೆ ಸಾಕ್ಷಿಯಾಗಿ ಅವನೇ ಸಾಕು. ಅವನು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.”

أَمۡ يَقُولُونَ ٱفۡتَرَىٰهُۖ قُلۡ إِنِ ٱفۡتَرَيۡتُهُۥ فَلَا تَمۡلِكُونَ لِي مِنَ ٱللَّهِ شَيۡـًٔاۖ هُوَ أَعۡلَمُ بِمَا تُفِيضُونَ فِيهِۚ كَفَىٰ بِهِۦ شَهِيدَۢا بَيۡنِي وَبَيۡنَكُمۡۖ وَهُوَ ٱلۡغَفُورُ ٱلرَّحِيمُ ٨

---

9. ಹೇಳಿರಿ: “ನಾನು ಹೊಸದಾಗಿ ಬಂದ ಸಂದೇಶವಾಹಕನಲ್ಲ. ನನ್ನನ್ನು ಮತ್ತು ನಿಮ್ಮನ್ನು ಏನು ಮಾಡಲಾಗುವುದೆಂದು ನನಗೆ ತಿಳಿದಿಲ್ಲ. ನನಗೆ ದೇವವಾಣಿಯಾಗಿ ನೀಡಲಾಗುತ್ತಿರುವುದನ್ನಷ್ಟೇ ನಾನು ಅನುಸರಿಸುತ್ತಿದ್ದೇನೆ. ನಾನೊಬ್ಬ ಸ್ಪಷ್ಟ ಮುನ್ನೆಚ್ಚರಿಕೆಗಾರನಲ್ಲದೆ ಇನ್ನೇನೂ ಅಲ್ಲ.”

قُلۡ مَا كُنتُ بِدۡعٗا مِّنَ ٱلرُّسُلِ وَمَآ أَدۡرِي مَا يُفۡعَلُ بِي وَلَا بِكُمۡۖ إِنۡ أَتَّبِعُ إِلَّا مَا يُوحَىٰٓ إِلَيَّ وَمَآ أَنَا۠ إِلَّا نَذِيرٞ مُّبِينٞ ٩

---

10. ಹೇಳಿರಿ: “ನೀವು ಆಲೋಚಿಸಿ ನೋಡಿದ್ದೀರಾ? ಇದು (ಕುರ್‌ಆನ್) ಅಲ್ಲಾಹನ ಕಡೆಯಿಂದಾಗಿದ್ದು, ನೀವು ಇದನ್ನು ನಿಷೇಧಿಸುವುದಾದರೆ, ಮತ್ತು ಇದರಂತಿರುವ ಒಂದಕ್ಕೆ ಇಸ್ರಾಯೇಲ್ ಮಕ್ಕಳಲ್ಲಿ ಒಬ್ಬರು ಸಾಕ್ಷ್ಯವಹಿಸಿ, ಅದರಲ್ಲಿ ವಿಶ್ವಾಸವಿಟ್ಟು, ನೀವು ಅಹಂಕಾರ ತೋರುವುದಾದರೆ (ನಿಮ್ಮ

قُلۡ أَرَءَيۡتُمۡ إِن كَانَ مِنۡ عِندِ ٱللَّهِ وَكَفَرۡتُم بِهِۦ وَشَهِدَ شَاهِدٞ مِّنۢ بَنِيٓ إِسۡرَٰٓءِيلَ عَلَىٰ مِثۡلِهِۦ فَـَٔامَنَ وَٱسۡتَكۡبَرۡتُمۡۚ إِنَّ ٱللَّهَ لَا يَهۡدِي ٱلۡقَوۡمَ ٱلظَّٰلِمِينَ ١٠

ಸ್ಥಿತಿಯು ಎಷ್ಟು ಶೋಚನೀಯವಾಗಿದೆ!) ನಿಶ್ಚಯವಾಗಿಯೂ ಅಕ್ರಮಿಗಳಾದ ಜನರನ್ನು ಅಲ್ಲಾಹು ಸನ್ಮಾರ್ಗಕ್ಕೆ ಸೇರಿಸುವುದಿಲ್ಲ."

---

11. ಸತ್ಯವಿಶ್ವಾಸಿಗಳ ಬಗ್ಗೆ ಸತ್ಯನಿಷೇಧಿಗಳು ಹೇಳಿದರು: "ಇದು (ಇಸ್ಲಾಂ ಧರ್ಮ) ಒಳಿತಾಗಿದ್ದರೆ ಈ ಜನರು ನಮಗಿಂತ ಮೊದಲು ಅದನ್ನು ತಲುಪುತ್ತಿರಲಿಲ್ಲ." ಅವರು ಅದರಿಂದ (ಕುರ್‌ಆನಿನಿಂದ) ಸನ್ಮಾರ್ಗವನ್ನು ಪಡೆಯದ ಕಾರಣ, "ಇದು ಪುರಾತನ ಕಾಲದ ಕಟ್ಟುಕಥೆಯಾಗಿದೆ" ಎಂದು ಅವರು ಹೇಳುತ್ತಾರೆ.

وَقَالَ ٱلَّذِينَ كَفَرُواْ لِلَّذِينَ ءَامَنُواْ لَوۡ كَانَ
خَيۡرٗا مَّا سَبَقُونَآ إِلَيۡهِۚ وَإِذۡ لَمۡ يَهۡتَدُواْ بِهِۦ
فَسَيَقُولُونَ هَٰذَآ إِفۡكٞ قَدِيمٞ ١١

---

12. ಇದಕ್ಕೆ ಮೊದಲು ಮೂಸಾರ ಗ್ರಂಥವು ಮಾರ್ಗದರ್ಶಕ ಮತ್ತು ದಯೆಯಾಗಿ ಬಂದಿತ್ತು. ಇದು (ಅದನ್ನು) ದೃಢೀಕರಿಸುವ ಅರಬ್ಬಿ ಭಾಷೆಯಲ್ಲಿರುವ ಗ್ರಂಥವಾಗಿದೆ. ಅಕ್ರಮಿಗಳಿಗೆ ಎಚ್ಚರಿಕೆ ನೀಡಲು ಮತ್ತು ಸತ್ಕರ್ಮವೆಸಗುವವರಿಗೆ ಸುವಾರ್ತೆ ನೀಡಲು (ಇದು ಅವತೀರ್ಣವಾಗಿದೆ).

وَمِن قَبۡلِهِۦ كِتَٰبُ مُوسَىٰٓ إِمَامٗا وَرَحۡمَةٗۚ وَهَٰذَا
كِتَٰبٞ مُّصَدِّقٞ لِّسَانًا عَرَبِيّٗا لِّيُنذِرَ ٱلَّذِينَ
ظَلَمُواْ وَبُشۡرَىٰ لِلۡمُحۡسِنِينَ ١٢

---

13. "ನಮ್ಮ ರಬ್ಬ್ (ಪರಿಪಾಲಕ) ಅಲ್ಲಾಹು" ಎಂದು ಹೇಳಿ ನಂತರ ಅದರಲ್ಲಿ ಸ್ಥಿರವಾಗಿ ನಿಂತವರು ಯಾರೋ ಅವರಿಗೆ ಯಾವುದೇ ಭಯವಿಲ್ಲ. ಅವರು ದುಃಖಿಸಬೇಕಾಗಿಯೂ ಬರುವುದಿಲ್ಲ.

إِنَّ ٱلَّذِينَ قَالُواْ رَبُّنَا ٱللَّهُ ثُمَّ ٱسۡتَقَٰمُواْ فَلَا
خَوۡفٌ عَلَيۡهِمۡ وَلَا هُمۡ يَحۡزَنُونَ ١٣

---

14. ಅವರೇ ಸ್ವರ್ಗವಾಸಿಗಳು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅದು ಅವರು ಮಾಡಿದ ಕರ್ಮಗಳ ಪ್ರತಿಫಲವಾಗಿದೆ.

أُوْلَٰٓئِكَ أَصۡحَٰبُ ٱلۡجَنَّةِ خَٰلِدِينَ فِيهَا جَزَآءَۢ
بِمَا كَانُواْ يَعۡمَلُونَ ١٤

---

15. ಮಾತಾಪಿತರಿಗೆ ಒಳಿತು ಮಾಡಲು ನಾವು ಮನುಷ್ಯನಿಗೆ ಉಪದೇಶ ನೀಡಿದ್ದೇವೆ. ಅವನ ತಾಯಿ ಬಹಳ ಕಷ್ಟವನ್ನು ಸಹಿಸಿ ಅವನನ್ನು ಗರ್ಭದಲ್ಲಿ ವಹಿಸಿದಳು ಮತ್ತು ಬಹಳ ಕಷ್ಟ ಸಹಿಸಿ ಅವನಿಗೆ ಜನ್ಮ ನೀಡಿದಳು. ಅವನ ಗರ್ಭಧಾರಣೆ ಮತ್ತು ಸ್ತನಪಾನದ ಅವಧಿಯು ಮೂವತ್ತು ತಿಂಗಳುಗಳಾಗಿವೆ. ಹೀಗೆ ಅವನು ತನ್ನ ಪ್ರೌಢಾವಸ್ಥೆಯನ್ನು ತಲುಪಿ ಅವನಿಗೆ ನಲ್ವತ್ತು ವರ್ಷ ಪ್ರಾಯವಾದಾಗ ಅವನು ಹೇಳುತ್ತಾನೆ: "ನನ್ನ ಪರಿಪಾಲಕನೇ! ನನಗೆ ಮತ್ತು ನನ್ನ ತಂದೆ-ತಾಯಿಗೆ ನೀನು ದಯಪಾಲಿಸಿದ ಅನುಗ್ರಹಗಳಿಗಾಗಿ ನಿನಗೆ ಕೃತಜ್ಞನಾಗಿರಲು ಮತ್ತು ನೀನು ಇಷ್ಟಪಡುವ ಸತ್ಕರ್ಮವನ್ನು ಮಾಡಲು ನನಗೆ ಸೌಭಾಗ್ಯ ನೀಡು. ನನ್ನ ಮಕ್ಕಳು ಮರಿಗಳನ್ನು ನೀತಿವಂತರನ್ನಾಗಿ ಮಾಡು. ನಿಶ್ಚಯವಾಗಿಯೂ ನಾನು ನಿನ್ನ ಕಡೆಗೆ ಪಶ್ಚಾತ್ತಾಪದಿಂದ ಮರಳಿದ್ದೇನೆ. ನಿಶ್ಚಯವಾಗಿಯೂ ನಾನು ಮುಸಲ್ಮಾನರಲ್ಲಿ ಒಬ್ಬನಾಗಿದ್ದೇನೆ."

وَوَصَّيۡنَا ٱلۡإِنسَٰنَ بِوَٰلِدَيۡهِ إِحۡسَٰنًاۖ حَمَلَتۡهُ أُمُّهُۥ
كُرۡهٗا وَوَضَعَتۡهُ كُرۡهٗاۖ وَحَمۡلُهُۥ وَفِصَٰلُهُۥ ثَلَٰثُونَ
شَهۡرًاۚ حَتَّىٰٓ إِذَا بَلَغَ أَشُدَّهُۥ وَبَلَغَ أَرۡبَعِينَ سَنَةٗ
قَالَ رَبِّ أَوۡزِعۡنِيٓ أَنۡ أَشۡكُرَ نِعۡمَتَكَ ٱلَّتِيٓ
أَنۡعَمۡتَ عَلَيَّ وَعَلَىٰ وَٰلِدَيَّ وَأَنۡ أَعۡمَلَ صَٰلِحٗا
تَرۡضَىٰهُ وَأَصۡلِحۡ لِي فِي ذُرِّيَّتِيٓۖ إِنِّي تُبۡتُ إِلَيۡكَ
وَإِنِّي مِنَ ٱلۡمُسۡلِمِينَ ١٥

16. ನಾವು ಅಂತಹ ಜನರಿಂದ ಅವರು ಮಾಡಿರುವ ಅತ್ಯುತ್ತಮ ಕರ್ಮಗಳನ್ನು ಸ್ವೀಕರಿಸುವೆವು ಮತ್ತು ಅವರ ದುಷ್ಕರ್ಮಗಳನ್ನು ಮನ್ನಿಸುವೆವು. ಅವರು ಸ್ವರ್ಗವಾಸಿಗಳು. ಅದು ಅವರಿಗೆ ನೀಡಲಾಗುವ ಸತ್ಯ ವಾಗ್ದಾನವಾಗಿದೆ.

أُوْلَٰٓئِكَ ٱلَّذِينَ نَتَقَبَّلُ عَنۡهُمۡ أَحۡسَنَ مَا عَمِلُواْ وَنَتَجَاوَزُ عَن سَيِّـَٔاتِهِمۡ فِيٓ أَصۡحَٰبِ ٱلۡجَنَّةِۖ وَعۡدَ ٱلصِّدۡقِ ٱلَّذِي كَانُواْ يُوعَدُونَ ١٦

17. ಆದರೆ ಯಾರು ತನ್ನ ಮಾತಾಪಿತರಿಗೆ ಹೀಗೆ ಹೇಳುತ್ತಾನೋ: "ನನಗೆ ನಿಮ್ಮ ಸಹವಾಸ ಸಾಕಾಗಿ ಹೋಗಿದೆ! ನನಗಿಂತ ಮೊದಲು ಕೂಡ ಅನೇಕ ತಲೆಮಾರುಗಳು ಕಳೆದುಹೋಗಿರುವಾಗ ನಾನು ಸತ್ತ ಬಳಿಕ ನನ್ನನ್ನು ಪುನಃ ಜೀವಂತಗೊಳಿಸಲಾಗುವುದು ಎಂದು ನೀವು ನನಗೆ ವಾಗ್ದಾನ ಮಾಡುತ್ತಿದ್ದೀರಾ?" ಅವರು (ತಂದೆ-ತಾಯಿ) ಅಲ್ಲಾಹನ ಮುಂದೆ ಅಳಲನ್ನು ತೋಡಿಕೊಳ್ಳುತ್ತಾ ಅವನೊಡನೆ ಹೇಳುತ್ತಾರೆ: "ನಿನಗೆ ದುರ್ಗತಿ ಕಾದಿದೆ! ಸತ್ಯವಿಶ್ವಾಸವನ್ನು ಸ್ವೀಕರಿಸು! ನಿಶ್ಚಯವಾಗಿಯೂ ಅಲ್ಲಾಹನ ವಾಗ್ದಾನವು ಸತ್ಯವಾಗಿದೆ." ಆಗ ಅವನು ಹೇಳುತ್ತಾನೆ: "ಇವು ಪುರಾತನ ಕಾಲದ ಜನರ ಕಟ್ಟುಕಥೆಗಳಲ್ಲದೆ ಇನ್ನೇನೂ ಅಲ್ಲ."

وَٱلَّذِي قَالَ لِوَٰلِدَيۡهِ أُفّٖ لَّكُمَآ أَتَعِدَانِنِيٓ أَنۡ أُخۡرَجَ وَقَدۡ خَلَتِ ٱلۡقُرُونُ مِن قَبۡلِي وَهُمَا يَسۡتَغِيثَانِ ٱللَّهَ وَيۡلَكَ ءَامِنۡ إِنَّ وَعۡدَ ٱللَّهِ حَقّٞ فَيَقُولُ مَا هَٰذَآ إِلَّآ أَسَٰطِيرُ ٱلۡأَوَّلِينَ ١٧

18. ಅವರಿಗಿಂತ ಮೊದಲು ಗತಿಸಿಹೋದ ಅನೇಕ ಸಮುದಾಯಗಳಲ್ಲಿ ಸೇರಿದ ಜಿನ್ನ್ ಮತ್ತು ಮನುಷ್ಯರಲ್ಲಿನ ಇಂತಹ ಜನರ ವಿಷಯದಲ್ಲಿ (ಅಲ್ಲಾಹನ ಶಿಕ್ಷೆಯ) ವಚನವು ಖಾತ್ರಿಯಾಗಿ ಬಿಟ್ಟಿದೆ. ನಿಶ್ಚಯವಾಗಿಯೂ ಅವರು ನಷ್ಟ ಹೊಂದಿದವರಾಗಿದ್ದಾರೆ.

أُوْلَٰٓئِكَ ٱلَّذِينَ حَقَّ عَلَيۡهِمُ ٱلۡقَوۡلُ فِيٓ أُمَمٖ قَدۡ خَلَتۡ مِن قَبۡلِهِم مِّنَ ٱلۡجِنِّ وَٱلۡإِنسِۖ إِنَّهُمۡ كَانُواْ خَٰسِرِينَ ١٨

19. ಅವರಲ್ಲಿ ಪ್ರತಿಯೊಬ್ಬರಿಗೂ ಅವರು ಮಾಡಿದ ಕರ್ಮಗಳಿಗೆ ತಕ್ಕ ಪದವಿಗಳಿವೆ. ಅವರು ಮಾಡಿದ ಕರ್ಮಗಳ ಪ್ರತಿಫಲವನ್ನು ಅವರಿಗೆ ಪೂರ್ಣವಾಗಿ ನೀಡುವುದಕ್ಕಾಗಿ. ಅವರಿಗೆ ಯಾವುದೇ ಅನ್ಯಾಯವಾಗುವುದಿಲ್ಲ.

وَلِكُلّٖ دَرَجَٰتٞ مِّمَّا عَمِلُواْۖ وَلِيُوَفِّيَهُمۡ أَعۡمَٰلَهُمۡ وَهُمۡ لَا يُظۡلَمُونَ ١٩

20. ಸತ್ಯನಿಷೇಧಿಗಳನ್ನು ನರಕದ ಮುಂದೆ ಹಾಜರುಪಡಿಸಲಾಗುವ ದಿನ! (ಅವರೊಡನೆ ಹೇಳಲಾಗುವುದು): "ನೀವು ಇಹಲೋಕ ಜೀವನದಲ್ಲೇ ನಿಮ್ಮ ಸತ್ಕರ್ಮಗಳನ್ನು ಹಾಳು ಮಾಡಿದ್ದೀರಿ ಮತ್ತು ಅದರ ಲಾಭವನ್ನು ಪಡೆದಿದ್ದೀರಿ. ನೀವು ಭೂಮಿಯಲ್ಲಿ ಅನ್ಯಾಯವಾಗಿ ಅಹಂಕಾರ ತೋರುತ್ತಿದ್ದ ಮತ್ತು ದುಷ್ಕರ್ಮವೆಸಗುತ್ತಿದ್ದ ಕಾರಣ ಇಂದು ನಿಮಗೆ ಅವಮಾನಕರ ಶಿಕ್ಷೆಯನ್ನು ಪ್ರತಿಫಲವಾಗಿ ನೀಡಲಾಗುವುದು."

وَيَوۡمَ يُعۡرَضُ ٱلَّذِينَ كَفَرُواْ عَلَى ٱلنَّارِ أَذۡهَبۡتُمۡ طَيِّبَٰتِكُمۡ فِي حَيَاتِكُمُ ٱلدُّنۡيَا وَٱسۡتَمۡتَعۡتُم بِهَا فَٱلۡيَوۡمَ تُجۡزَوۡنَ عَذَابَ ٱلۡهُونِ بِمَا كُنتُمۡ تَسۡتَكۡبِرُونَ فِي ٱلۡأَرۡضِ بِغَيۡرِ ٱلۡحَقِّ وَبِمَا كُنتُمۡ تَفۡسُقُونَ ٢٠

21. ಆದ್ ಗೋತ್ರದವರ ಸಹೋದರ (ಹೂದ್‌ರನ್ನು) ಸ್ಮರಿಸಿರಿ. ಅವರು ಅಹ್ಕಾಫ್‌ನಲ್ಲಿರುವ[1] ತಮ್ಮ ಜನರಿಗೆ ಮುನ್ನೆಚ್ಚರಿಕೆ ನೀಡಿದ

وَٱذۡكُرۡ أَخَا عَادٍ إِذۡ أَنذَرَ قَوۡمَهُۥ بِٱلۡأَحۡقَافِ وَقَدۡ خَلَتِ ٱلنُّذُرُ مِنۢ بَيۡنِ يَدَيۡهِ وَمِنۡ خَلۡفِهِۦٓ

[1] ಅಹ್ಕಾಫ್ ಎಂದರೆ ಯಮನ್‌ನ ಹದ್ರಮೌತ್‌ನ ಸಮೀಪವಿರುವ ಮರಳ ದಿಬ್ಬಗಳು ತುಂಬಿದ ಪ್ರದೇಶ. ಹೂದ್ (ಅವರ ಮೇಲೆ ಶಾಂತಿಯಿರಲಿ)

| | |
|---|---|
| ಸಂದರ್ಭ. ಅವರಿಗಿಂತ ಮೊದಲು ಮತ್ತು ಅವರ ನಂತರ ಅನೇಕ ಮುನ್ನೆಚ್ಚರಿಕೆಗಾರರು (ಪ್ರವಾದಿಗಳು) ಬಂದು ಹೋಗಿದ್ದಾರೆ. "ನೀವು ಅಲ್ಲಾಹನನ್ನು ಬಿಟ್ಟು ಬೇರೆ ಯಾರನ್ನೂ ಆರಾಧಿಸಬೇಡಿ. ನಿಶ್ಚಯವಾಗಿಯೂ ನಿಮ್ಮ ಮೇಲೆ ಆ ಭಯಾನಕವಾದ ದಿನದ ಶಿಕ್ಷೆಯನ್ನು ನಾನು ಭಯಪಡುತ್ತಿದ್ದೇನೆ" (ಎಂದು ಅವರು ಎಚ್ಚರಿಸಿದರು). | أَلَّا تَعۡبُدُوٓاْ إِلَّا ٱللَّهَ إِنِّيٓ أَخَافُ عَلَيۡكُمۡ عَذَابَ يَوۡمٍ عَظِيمٖ ﴿٢١﴾ |
| 22. ಜನರು ಹೇಳಿದರು: "ನಮ್ಮನ್ನು ನಮ್ಮ ದೇವರುಗಳಿಂದ ದೂರಗೊಳಿಸಲು ನೀನು ನಮ್ಮ ಬಳಿಗೆ ಬಂದಿರುವೆಯಾ? ನೀನು ಸತ್ಯವಂತನಾಗಿದ್ದರೆ ನಮಗೆ ಎಚ್ಚರಿಕೆ ನೀಡುವ ಆ ಶಿಕ್ಷೆಯನ್ನು ತಂದು ತೋರಿಸು." | قَالُوٓاْ أَجِئۡتَنَا لِتَأۡفِكَنَا عَنۡ ءَالِهَتِنَا فَأۡتِنَا بِمَا تَعِدُنَآ إِن كُنتَ مِنَ ٱلصَّٰدِقِينَ ﴿٢٢﴾ |
| 23. ಹೂದ್ ಹೇಳಿದರು: "ಅದರ ಜ್ಞಾನವು ಅಲ್ಲಾಹನ ಬಳಿಯಿದೆ. ನನ್ನನ್ನು ಯಾವ ಸಂದೇಶದೊಂದಿಗೆ ಕಳುಹಿಸಲಾಗಿದೆಯೋ ಅದನ್ನು ನಾನು ನಿಮಗೆ ತಲುಪಿಸುತ್ತಿದ್ದೇನೆ. ಆದರೆ ನಾನು ನಿಮ್ಮನ್ನು ಅವಿವೇಕದಿಂದ ವರ್ತಿಸುವ ಜನರಂತೆ ಕಾಣುತ್ತಿದ್ದೇನೆ." | قَالَ إِنَّمَا ٱلۡعِلۡمُ عِندَ ٱللَّهِ وَأُبَلِّغُكُم مَّآ أُرۡسِلۡتُ بِهِۦ وَلَٰكِنِّيٓ أَرَىٰكُمۡ قَوۡمٗا تَجۡهَلُونَ ﴿٢٣﴾ |
| 24. ನಂತರ ಆ ಶಿಕ್ಷೆಯನ್ನು ತಮ್ಮ ಕಣಿವೆಗಳ ಕಡೆಗೆ ಬರುವ ಒಂದು ಮೋಡದ ರೂಪದಲ್ಲಿ ಕಂಡಾಗ ಅವರು ಹೇಳಿದರು: "ಈ ಮೋಡವು ನಮಗೆ ಮಳೆ ಸುರಿಸುತ್ತದೆ!" ಅಲ್ಲ, ಬದಲಿಗೆ ಅದು ನೀವು ತ್ವರೆ ಮಾಡುತ್ತಿದ್ದ ಶಿಕ್ಷೆಯಾಗಿದೆ. ಘೋರ ಶಿಕ್ಷೆಯನ್ನು ಒಳಗೊಂಡಿರುವ ಬಿರುಗಾಳಿ. | فَلَمَّا رَأَوۡهُ عَارِضٗا مُّسۡتَقۡبِلَ أَوۡدِيَتِهِمۡ قَالُواْ هَٰذَا عَارِضٞ مُّمۡطِرُنَاۚ بَلۡ هُوَ مَا ٱسۡتَعۡجَلۡتُم بِهِۦۖ رِيحٞ فِيهَا عَذَابٌ أَلِيمٞ ﴿٢٤﴾ |
| 25. ಅದು ತನ್ನ ಪರಿಪಾಲಕನ (ಅಲ್ಲಾಹನ) ಆಜ್ಞೆಯಂತೆ ಎಲ್ಲಾ ವಸ್ತುಗಳನ್ನೂ ನಾಶ ಮಾಡುತ್ತಿದೆ. ಆಗ ಅವರ ಸ್ಥಿತಿ ಏನಾಯಿತೆಂದರೆ ಅವರ ಮನೆಗಳ ಹೊರತು ಬೇರೇನೂ ಅಲ್ಲಿ ಕಾಣಿಸುತ್ತಿರಲಿಲ್ಲ. ಅಪರಾಧಿಗಳಾದ ಜನರಿಗೆ ನಾವು ಈ ರೀತಿ ಪ್ರತಿಫಲವನ್ನು ನೀಡುತ್ತೇವೆ. | تُدَمِّرُ كُلَّ شَيۡءِۭ بِأَمۡرِ رَبِّهَا فَأَصۡبَحُواْ لَا يُرَىٰٓ إِلَّا مَسَٰكِنُهُمۡۚ كَذَٰلِكَ نَجۡزِي ٱلۡقَوۡمَ ٱلۡمُجۡرِمِينَ ﴿٢٥﴾ |
| 26. ನಾವು ನಿಮಗೆ ನೀಡದ ಸಾಮರ್ಥ್ಯವನ್ನು ಅವರಿಗೆ (ಆದ್ ಗೋತ್ರದವರಿಗೆ) ನೀಡಿದ್ದೆವು. ನಾವು ಅವರಿಗೆ ಶ್ರವಣ, ದೃಷ್ಟಿ ಮತ್ತು ಹೃದಯಗಳನ್ನು ನೀಡಿದ್ದೆವು. ಆದರೆ ಅವರು ಅಲ್ಲಾಹನ ವಚನಗಳನ್ನು ನಿಷೇಧಿಸತೊಡಗಿದಾಗ ಅವರ ಶ್ರವಣ, ದೃಷ್ಟಿ ಮತ್ತು ಹೃದಯಗಳು ಅವರಿಗೆ ಯಾವುದೇ ಉಪಕಾರ ಮಾಡಲಿಲ್ಲ. ಅವರು ಏನನ್ನು ತಮಾಷೆ ಮಾಡುತ್ತಿದ್ದರೋ ಅದು ಅವರನ್ನು ಆವರಿಸಿಯೇ ಬಿಟ್ಟಿತು. | وَلَقَدۡ مَكَّنَّٰهُمۡ فِيمَآ إِن مَّكَّنَّٰكُمۡ فِيهِ وَجَعَلۡنَا لَهُمۡ سَمۡعٗا وَأَبۡصَٰرٗا وَأَفۡـِٔدَةٗ فَمَآ أَغۡنَىٰ عَنۡهُمۡ سَمۡعُهُمۡ وَلَآ أَبۡصَٰرُهُمۡ وَلَآ أَفۡـِٔدَتُهُم مِّن شَيۡءٍ إِذۡ كَانُواْ يَجۡحَدُونَ بِـَٔايَٰتِ ٱللَّهِ وَحَاقَ بِهِم مَّا كَانُواْ بِهِۦ يَسۡتَهۡزِءُونَ ﴿٢٦﴾ |

ರ ಜನರು ಇಲ್ಲಿ ವಾಸವಾಗಿದ್ದರು.

27. ನಿಮ್ಮ ಪರಿಸರದಲ್ಲಿರುವ ಅನೇಕ ದೇಶಗಳನ್ನು ನಾವು ನಾಶ ಮಾಡಿದ್ದೇವೆ. ಅವರು ಸತ್ಯಕ್ಕೆ ಮರಳಿ ಬರುವ ಸಲುವಾಗಿ ನಾವು ಅವರಿಗೆ ವಿವಿಧ ರೀತಿಯಲ್ಲಿ ನಮ್ಮ ದೃಷ್ಟಾಂತಗಳನ್ನು ವಿವರಿಸಿಕೊಟ್ಟಿದ್ದೇವೆ.

وَلَقَدۡ أَهۡلَكۡنَا مَا حَوۡلَكُم مِّنَ ٱلۡقُرَىٰ وَصَرَّفۡنَا ٱلۡأٓيَٰتِ لَعَلَّهُمۡ يَرۡجِعُونَ ﴿٢٧﴾

28. ಅಲ್ಲಾಹನ ಸಾಮೀಪ್ಯವನ್ನು ಪಡೆಯುವುದಕ್ಕಾಗಿ ಅವರು ಅಲ್ಲಾಹನನ್ನು ಬಿಟ್ಟು ಯಾವ ಯಾವ ದೇವರುಗಳನ್ನು ಸ್ವೀಕರಿಸಿದ್ದರೋ ಅವರೇಕೆ ಅವರಿಗೆ ಸಹಾಯ ಮಾಡಲಿಲ್ಲ? ಬದಲಿಗೆ, ಅವರು (ದೇವರುಗಳು) ಅವರನ್ನು ಬಿಟ್ಟು ಹೋದರು. ವಾಸ್ತವವಾಗಿ, ಅದು ಅವರು ಸೃಷ್ಟಿಸಿದ ಸುಳ್ಳು ಮತ್ತು ಅವರು ಊಹಿಸುತ್ತಿದ್ದ ಆರೋಪವಾಗಿತ್ತು.

فَلَوۡلَا نَصَرَهُمُ ٱلَّذِينَ ٱتَّخَذُواْ مِن دُونِ ٱللَّهِ قُرۡبَانًا ءَالِهَةَۢۖ بَلۡ ضَلُّواْ عَنۡهُمۡۚ وَذَٰلِكَ إِفۡكُهُمۡ وَمَا كَانُواْ يَفۡتَرُونَ ﴿٢٨﴾

29. ಕುರ್‌ಆನ್‌ಗೆ ಕಿವಿಗೊಡುವುದಕ್ಕಾಗಿ ನಾವು ಜಿನ್ನ್‌ಗಳಲ್ಲಿ ಸೇರಿದ ಒಂದು ಗುಂಪನ್ನು ನಿಮ್ಮ ಬಳಿಗೆ ಕಳುಹಿಸಿದ ಸಂದರ್ಭ(ವನ್ನು ಸ್ಮರಿಸಿ). ಅವರು ಅವರ (ಪ್ರವಾದಿಯ) ಬಳಿಗೆ ತಲುಪಿದಾಗ "ನಿಶ್ಯಬ್ದವಾಗಿ ಕಿವಿಗೊಡಿರಿ" ಎಂದರು. ನಂತರ ಅದರ ಪಠಣವು ಮುಗಿದಾಗ ಅವರು ತಮ್ಮ ಜನರ ಬಳಿಗೆ ಎಚ್ಚರಿಕೆ ನೀಡಲು ಮರಳಿದರು.

وَإِذۡ صَرَفۡنَآ إِلَيۡكَ نَفَرٗا مِّنَ ٱلۡجِنِّ يَسۡتَمِعُونَ ٱلۡقُرۡءَانَ فَلَمَّا حَضَرُوهُ قَالُوٓاْ أَنصِتُواْۖ فَلَمَّا قُضِيَ وَلَّوۡاْ إِلَىٰ قَوۡمِهِم مُّنذِرِينَ ﴿٢٩﴾

30. ಅವರು ಹೇಳಿದರು: "ಓ ನಮ್ಮ ಜನರೇ! ಮೂಸಾರ ನಂತರ ಅವತೀರ್ಣವಾದ ಒಂದು ಗ್ರಂಥದ ಪಠಣವನ್ನು ನಾವು ಕಿವಿಗೊಟ್ಟು ಕೇಳಿದೆವು. ಅದು ಅದಕ್ಕಿಂತ ಮೊದಲಿನ ಗ್ರಂಥಗಳನ್ನು ದೃಢೀಕರಿಸುತ್ತದೆ. ಅದು ಸತ್ಯ ಧರ್ಮಕ್ಕೆ ಮತ್ತು ನೇರ ಮಾರ್ಗಕ್ಕೆ ದಾರಿ ತೋರಿಸುತ್ತದೆ.

قَالُواْ يَٰقَوۡمَنَآ إِنَّا سَمِعۡنَا كِتَٰبًا أُنزِلَ مِنۢ بَعۡدِ مُوسَىٰ مُصَدِّقٗا لِّمَا بَيۡنَ يَدَيۡهِ يَهۡدِيٓ إِلَى ٱلۡحَقِّ وَإِلَىٰ طَرِيقٖ مُّسۡتَقِيمٖ ﴿٣٠﴾

31. ಓ ನಮ್ಮ ಜನರೇ! ಅಲ್ಲಾಹನ ಕಡೆಗೆ ಕರೆಯುವ ವ್ಯಕ್ತಿಗೆ ಉತ್ತರ ನೀಡಿರಿ ಮತ್ತು ಅವರಲ್ಲಿ ವಿಶ್ವಾಸವಿಡಿರಿ. ಅವನು (ಅಲ್ಲಾಹು) ನಿಮ್ಮ ಪಾಪಗಳನ್ನು ಕ್ಷಮಿಸುವನು ಮತ್ತು ನಿಮ್ಮನ್ನು ಯಾತನಾಮಯ ಶಿಕ್ಷೆಯಿಂದ ಕಾಪಾಡುವನು.

يَٰقَوۡمَنَآ أَجِيبُواْ دَاعِيَ ٱللَّهِ وَءَامِنُواْ بِهِۦ يَغۡفِرۡ لَكُم مِّن ذُنُوبِكُمۡ وَيُجِرۡكُم مِّنۡ عَذَابٍ أَلِيمٖ ﴿٣١﴾

32. ಅಲ್ಲಾಹನ ಕಡೆಗೆ ಕರೆಯುವ ವ್ಯಕ್ತಿಗೆ ಯಾರು ಉತ್ತರ ನೀಡುವುದಿಲ್ಲವೋ, ಅವನು ಭೂಮಿಯಲ್ಲಿ (ಎಲ್ಲಾದರೂ ಪಲಾಯನ ಮಾಡಿ) ಅಲ್ಲಾಹನನ್ನು ಸೋಲಿಸಲಾರ. ಅಲ್ಲಾಹನ ಹೊರತು ಅವನಿಗೆ ಬೇರೆ ರಕ್ಷಕರೂ ಇಲ್ಲ. ಅವರು ಸ್ಪಷ್ಟ ದುರ್ಮಾರ್ಗದಲ್ಲಿರುವವರು."

وَمَن لَّا يُجِبۡ دَاعِيَ ٱللَّهِ فَلَيۡسَ بِمُعۡجِزٖ فِي ٱلۡأَرۡضِ وَلَيۡسَ لَهُۥ مِن دُونِهِۦٓ أَوۡلِيَآءُۚ أُوْلَٰٓئِكَ فِي ضَلَٰلٖ مُّبِينٍ ﴿٣٢﴾

33. ಭೂಮ್ಯಾಕಾಶಗಳನ್ನು ಸೃಷ್ಟಿಸಿದ ಮತ್ತು ಅವುಗಳನ್ನು ಸೃಷ್ಟಿಸಿದ ಕಾರಣ ಆಯಾಸಗೊಳ್ಳದ ಅಲ್ಲಾಹನಿಗೆ ನಿಶ್ಚಯವಾಗಿಯೂ

أَوَلَمۡ يَرَوۡاْ أَنَّ ٱللَّهَ ٱلَّذِي خَلَقَ ٱلسَّمَٰوَٰتِ

ಸತ್ತವರನ್ನು ಬದುಕಿಸುವ ಸಾಮರ್ಥ್ಯವಿದೆಯೆಂದು ಅವರು ಆಲೋಚಿಸಿ ನೋಡುವುದಿಲ್ಲವೇ? ಹೌದು! ನಿಶ್ಚಯವಾಗಿಯೂ ಅವನು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

وَٱلۡأَرۡضَ وَلَمۡ يَعۡيَ بِخَلۡقِهِنَّ بِقَٰدِرٍ عَلَىٰٓ أَن يُحۡـِۧيَ ٱلۡمَوۡتَىٰۚ بَلَىٰٓۚ إِنَّهُۥ عَلَىٰ كُلِّ شَيۡءٖ قَدِيرٞ ٣٣

---

34. ಸತ್ಯನಿಷೇಧಿಗಳನ್ನು ನರಕದ ಮುಂದೆ ಹಾಜರುಪಡಿಸಲಾಗುವ ದಿನ! (ಅವರೊಡನೆ ಕೇಳಲಾಗುವುದು): "ಇದು ಸತ್ಯವಲ್ಲವೇ?" ಅವರು ಹೇಳುವರು: "ಹೌದು! ನಮ್ಮ ಪರಿಪಾಲಕನ (ಅಲ್ಲಾಹನ) ಮೇಲಾಣೆ!" ಅವನು ಹೇಳುವನು: "ಹಾಗಾದರೆ ನೀವು ಸತ್ಯವನ್ನು ನಿಷೇಧಿಸಿದ ಕಾರಣ ಶಿಕ್ಷೆಯ ರುಚಿಯನ್ನು ನೋಡಿರಿ!"

وَيَوۡمَ يُعۡرَضُ ٱلَّذِينَ كَفَرُواْ عَلَى ٱلنَّارِ أَلَيۡسَ هَٰذَا بِٱلۡحَقِّۖ قَالُواْ بَلَىٰ وَرَبِّنَاۚ قَالَ فَذُوقُواْ ٱلۡعَذَابَ بِمَا كُنتُمۡ تَكۡفُرُونَ ٣٤

---

35. ಆದ್ದರಿಂದ ದೃಢಚಿತ್ತರಾದ ಸಂದೇಶವಾಹಕರುಗಳು ತಾಳ್ಮೆ ತೋರಿದಂತೆ ನೀವೂ ತಾಳ್ಮೆ ತೋರಿರಿ. ಅವರ (ಸತ್ಯನಿಷೇಧಿಗಳ) ವಿಷಯದಲ್ಲಿ ತ್ವರೆ ಮಾಡಬೇಡಿ. ಅವರಿಗೆ ಎಚ್ಚರಿಕೆ ನೀಡಲಾಗಿರುವ ಶಿಕ್ಷೆಯನ್ನು ಅವರು ಕಣ್ಣಾರೆ ನೋಡುವ ದಿನ ಅವರು (ಇಹಲೋಕದಲ್ಲಿ) ಒಂದು ತಾಸು ಮಾತ್ರ ವಾಸವಾಗಿದ್ದರು ಎಂದು ಅವರಿಗೆ ಭಾಸವಾಗುವುದು. ಇದು ಸಂದೇಶವನ್ನು ತಲುಪಿಸುವುದಾಗಿದೆ. ದುಷ್ಕರ್ಮಿಗಳಾದ ಜನರ ಹೊರತು ಬೇರೆ ಯಾರಾದರೂ ನಾಶವಾಗುವರೇ?

فَٱصۡبِرۡ كَمَا صَبَرَ أُوْلُواْ ٱلۡعَزۡمِ مِنَ ٱلرُّسُلِ وَلَا تَسۡتَعۡجِل لَّهُمۡۚ كَأَنَّهُمۡ يَوۡمَ يَرَوۡنَ مَا يُوعَدُونَ لَمۡ يَلۡبَثُوٓاْ إِلَّا سَاعَةٗ مِّن نَّهَارِۭۚ بَلَٰغٞۚ فَهَلۡ يُهۡلَكُ إِلَّا ٱلۡقَوۡمُ ٱلۡفَٰسِقُونَ ٣٥

# 47. ಮುಹಮ್ಮದ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

---

1. ಸತ್ಯವನ್ನು ನಿಷೇಧಿಸಿದವರು ಮತ್ತು ಅಲ್ಲಾಹನ ಮಾರ್ಗದಿಂದ ಜನರನ್ನು ತಡೆದವರು ಯಾರೋ ಅವರ ಕರ್ಮಗಳನ್ನು ಅಲ್ಲಾಹು ನಿಷ್ಫಲಗೊಳಿಸುವನು.

ٱلَّذِينَ كَفَرُواْ وَصَدُّواْ عَن سَبِيلِ ٱللَّهِ أَضَلَّ أَعۡمَٰلَهُمۡ ١

---

2. ಸತ್ಯವಿಶ್ವಾಸಿಗಳು, ಸತ್ಕರ್ಮವೆಸಗಿದವರು ಮತ್ತು ಮುಹಮ್ಮದರಿಗೆ ಅವತೀರ್ಣವಾದ ಸಂದೇಶದಲ್ಲಿ—ಅದು ಅವರ ಪರಿಪಾಲಕನ (ಅಲ್ಲಾಹನ) ಕಡೆಯ ಸತ್ಯವಾಗಿದೆ—ವಿಶ್ವಾಸವಿಟ್ಟವರು ಯಾರೋ ಅವರ ಕೆಡುಕುಗಳನ್ನು ಅಲ್ಲಾಹು ಅಳಿಸುವನು ಮತ್ತು ಅವರ ಸ್ಥಿತಿಯನ್ನು ಸುಧಾರಿಸುವನು.

وَٱلَّذِينَ ءَامَنُواْ وَعَمِلُواْ ٱلصَّٰلِحَٰتِ وَءَامَنُواْ بِمَا نُزِّلَ عَلَىٰ مُحَمَّدٖ وَهُوَ ٱلۡحَقُّ مِن رَّبِّهِمۡ كَفَّرَ عَنۡهُمۡ سَيِّـَٔاتِهِمۡ وَأَصۡلَحَ بَالَهُمۡ ٢

---

3. ಅದೇಕೆಂದರೆ ಸತ್ಯನಿಷೇಧಿಗಳು ಮಿಥ್ಯವನ್ನು ಅನುಸರಿಸಿದರು ಮತ್ತು ಸತ್ಯವಿಶ್ವಾಸಿಗಳು ತಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಸತ್ಯವನ್ನು ಅನುಸರಿಸಿದರು. ಈ ರೀತಿ ಅಲ್ಲಾಹು ಜನರಿಗೆ ಅವರ ಸ್ಥಿತಿಗಳನ್ನು ವಿವರಿಸಿಕೊಡುತ್ತಾನೆ.

ذَٰلِكَ بِأَنَّ ٱلَّذِينَ كَفَرُواْ ٱتَّبَعُواْ ٱلۡبَٰطِلَ وَأَنَّ ٱلَّذِينَ ءَامَنُواْ ٱتَّبَعُواْ ٱلۡحَقَّ مِن رَّبِّهِمۡۚ كَذَٰلِكَ يَضۡرِبُ ٱللَّهُ لِلنَّاسِ أَمۡثَٰلَهُمۡ ٣

4. ನೀವು ಸತ್ಯನಿಷೇಧಿಗಳೊಡನೆ (ಯುದ್ಧದಲ್ಲಿ) ಮುಖಾಮುಖಿಯಾದರೆ ಅವರ ಕತ್ತುಗಳ ಮೇಲೆ ಬೀಸಿರಿ. ಅವರನ್ನು ಚೆನ್ನಾಗಿ ಬಗ್ಗುಬಡಿದ ನಂತರ ಅವರನ್ನು ಬಿಗಿಯಾಗಿ ಬಂಧಿಸಿರಿ. ನಂತರ ಒಂದೋ ಅವರೊಡನೆ ದಾಕ್ಷಿಣ್ಯ ತೋರಿರಿ[1] ಅಥವಾ ವಿಮೋಚನಾ ಶುಲ್ಕವನ್ನು ಪಡೆದು ಅವರನ್ನು ಸ್ವತಂತ್ರಗೊಳಿಸಿರಿ—ಯುದ್ಧವು ಅದರ ಭಾರವನ್ನು ಕಳಚುವ ತನಕ.[2] ಇದೇ ನಿಯಮ. ಅಲ್ಲಾಹು ಇಚ್ಛಿಸುತ್ತಿದ್ದರೆ ಅವನೇ ಅವರಿಂದ ಪ್ರತೀಕಾರ ಪಡೆಯುತ್ತಿದ್ದನು. ಆದರೆ ಇದು ನಿಮ್ಮಲ್ಲಿ ಕೆಲವರನ್ನು ಇತರ ಕೆಲವರ ಮೂಲಕ ಪರೀಕ್ಷಿಸುವುದಕ್ಕಾಗಿದೆ. ಯಾರು ಅಲ್ಲಾಹನ ಮಾರ್ಗದಲ್ಲಿ ಹತರಾಗುತ್ತಾರೋ ಅವರ ಕರ್ಮಗಳನ್ನು ಅವನು ಎಂದಿಗೂ ನಿಷ್ಫಲಗೊಳಿಸುವುದಿಲ್ಲ.

فَإِذَا لَقِيتُمُ ٱلَّذِينَ كَفَرُواْ فَضَرۡبَ ٱلرِّقَابِ
حَتَّىٰٓ إِذَآ أَثۡخَنتُمُوهُمۡ فَشُدُّواْ ٱلۡوَثَاقَ فَإِمَّا مَنَّۢا
بَعۡدُ وَإِمَّا فِدَآءً حَتَّىٰ تَضَعَ ٱلۡحَرۡبُ أَوۡزَارَهَاۚ
ذَٰلِكَۖ وَلَوۡ يَشَآءُ ٱللَّهُ لَٱنتَصَرَ مِنۡهُمۡ وَلَٰكِن
لِّيَبۡلُوَاْ بَعۡضَكُم بِبَعۡضٖۗ وَٱلَّذِينَ قُتِلُواْ فِي
سَبِيلِ ٱللَّهِ فَلَن يُضِلَّ أَعۡمَٰلَهُمۡ ٤

5. ಅವನು ಅವರಿಗೆ ದಾರಿ ತೋರಿಸುವನು ಮತ್ತು ಅವರ ಸ್ಥಿತಿಯನ್ನು ಸುಧಾರಿಸುವನು.

سَيَهۡدِيهِمۡ وَيُصۡلِحُ بَالَهُمۡ ٥

6. ಅವನು ಅವರಿಗೆ ಪರಿಚಯಿಸಿಕೊಟ್ಟ ಆ ಸ್ವರ್ಗಕ್ಕೆ ಅವನು ಅವರನ್ನು ಪ್ರವೇಶ ಮಾಡಿಸುವನು.

وَيُدۡخِلُهُمُ ٱلۡجَنَّةَ عَرَّفَهَا لَهُمۡ ٦

7. ಓ ಸತ್ಯವಿಶ್ವಾಸಿಗಳೇ! ನೀವು ಅಲ್ಲಾಹನಿಗೆ ಸಹಾಯ ಮಾಡಿದರೆ ಅವನು ನಿಮಗೆ ಸಹಾಯ ಮಾಡುತ್ತಾನೆ ಮತ್ತು ನಿಮ್ಮ ಪಾದಗಳನ್ನು ದೃಢವಾಗಿ ನಿಲ್ಲಿಸುತ್ತಾನೆ.

يَٰٓأَيُّهَا ٱلَّذِينَ ءَامَنُوٓاْ إِن تَنصُرُواْ ٱللَّهَ يَنصُرۡكُمۡ
وَيُثَبِّتۡ أَقۡدَامَكُمۡ ٧

8. ಸತ್ಯನಿಷೇಧಿಗಳು ಯಾರೋ ಅವರಿಗೆ ವಿನಾಶ ಕಾದಿದೆ. ಅಲ್ಲಾಹು ಅವರ ಕರ್ಮಗಳನ್ನು ವ್ಯರ್ಥಗೊಳಿಸುವನು.

وَٱلَّذِينَ كَفَرُواْ فَتَعۡسٗا لَّهُمۡ
وَأَضَلَّ أَعۡمَٰلَهُمۡ ٨

9. ಅದೇಕೆಂದರೆ ಅಲ್ಲಾಹು ಅವತೀರ್ಣಗೊಳಿಸಿದ್ದನ್ನು ಅವರು ದ್ವೇಷಿಸಿದರು. ಆದ್ದರಿಂದ ಅವನು ಅವರ ಕರ್ಮಗಳನ್ನು ನಿಷ್ಫಲಗೊಳಿಸಿದನು.

ذَٰلِكَ بِأَنَّهُمۡ كَرِهُواْ مَآ أَنزَلَ ٱللَّهُ فَأَحۡبَطَ
أَعۡمَٰلَهُمۡ ٩

10. ಅವರು ಭೂಮಿಯಲ್ಲಿ ಸಂಚರಿಸಿ ಅವರಿಗಿಂತ ಮೊದಲಿನವರ ಅಂತ್ಯವು ಹೇಗಿತ್ತೆಂದು ನೋಡುವುದಿಲ್ಲವೇ? ಅಲ್ಲಾಹು ಅವರನ್ನು ನಿರ್ನಾಮ ಮಾಡಿದನು. ಸತ್ಯನಿಷೇಧಿಗಳಿಗೆ ಅಂತಹುದೇ ಶಿಕ್ಷೆಯಿದೆ.

أَفَلَمۡ يَسِيرُواْ فِي ٱلۡأَرۡضِ فَيَنظُرُواْ كَيۡفَ كَانَ
عَٰقِبَةُ ٱلَّذِينَ مِن قَبۡلِهِمۡۖ دَمَّرَ ٱللَّهُ عَلَيۡهِمۡۖ
وَلِلۡكَٰفِرِينَ أَمۡثَٰلُهَا ١٠

11. ಅದೇಕೆಂದರೆ ಅಲ್ಲಾಹು ಸತ್ಯವಿಶ್ವಾಸಿಗಳ ರಕ್ಷಕನಾಗಿದ್ದಾನೆ ಮತ್ತು ಸತ್ಯನಿಷೇಧಿಗಳಿಗೆ ಯಾವುದೇ ರಕ್ಷಕರಿಲ್ಲ.

ذَٰلِكَ بِأَنَّ ٱللَّهَ مَوۡلَى ٱلَّذِينَ ءَامَنُواْ وَأَنَّ
ٱلۡكَٰفِرِينَ لَا مَوۡلَىٰ لَهُمۡ ١١

---

[1] ದಾಕ್ಷಿಣ್ಯ ತೋರುವುದು ಎಂದರೆ ಪರಿಹಾರ ಪಡೆಯದೆ ಅವರನ್ನು ಬಿಟ್ಟುಬಿಡುವುದು.

[2] ಅಂದರೆ ಯುದ್ಧವು ಮುಗಿಯುವ ತನಕ.

12. ನಿಶ್ಚಯವಾಗಿಯೂ ಅಲ್ಲಾಹು ಸತ್ಯವಿಶ್ವಾಸಿಗಳನ್ನು ಮತ್ತು ಸತ್ಕ-
ರ್ಮವೆಸಗಿದವರನ್ನು ತಳಭಾಗದಿಂದ ನದಿಗಳು ಹರಿಯುವ
ಸ್ವರ್ಗೋದ್ಯಾನಗಳಿಗೆ ಪ್ರವೇಶ ಮಾಡಿಸುವನು. ಸತ್ಯನಿಷೇಧಿಗಳು
(ಇಹಲೋಕದಲ್ಲಿ) ಆನಂದಿಸುತ್ತಾರೆ ಮತ್ತು ಜಾನುವಾರುಗಳು
ತಿನ್ನುವಂತೆ ತಿನ್ನುತ್ತಾರೆ. ನರಕವು ಅವರ ವಾಸಸ್ಥಳವಾಗಿದೆ.

إِنَّ ٱللَّهَ يُدۡخِلُ ٱلَّذِينَ ءَامَنُواْ وَعَمِلُواْ
ٱلصَّٰلِحَٰتِ جَنَّٰتٖ تَجۡرِي مِن تَحۡتِهَا ٱلۡأَنۡهَٰرُۖ
وَٱلَّذِينَ كَفَرُواْ يَتَمَتَّعُونَ وَيَأۡكُلُونَ كَمَا
تَأۡكُلُ ٱلۡأَنۡعَٰمُ وَٱلنَّارُ مَثۡوٗى لَّهُمۡ ١٢

13. ನಿಮ್ಮನ್ನು ಹೊರಹಾಕಿದ ಈ ಊರಿಗಿಂತಲೂ (ಮಕ್ಕಾ)
ಬಲಿಷ್ಠವಾದ ಎಷ್ಟು ಊರುಗಳಿವೆ! ಅವರನ್ನು ನಾವು ನಾಶ
ಮಾಡಿದೆವು. ಅವರಿಗೆ ಯಾವುದೇ ಸಹಾಯಕರು ಇರಲಿಲ್ಲ.

وَكَأَيِّن مِّن قَرۡيَةٍ هِيَ أَشَدُّ قُوَّةٗ مِّن قَرۡيَتِكَ ٱلَّتِيٓ
أَخۡرَجَتۡكَ أَهۡلَكۡنَٰهُمۡ فَلَا نَاصِرَ لَهُمۡ ١٣

14. ತನ್ನ ಪರಿಪಾಲಕನ (ಅಲ್ಲಾಹನ) ಕಡೆಯ ಸ್ಪಷ್ಟ ಸಾಕ್ಷ್ಯದ ಮೇಲೆ
ನಿಂತಿರುವ ವ್ಯಕ್ತಿ ದುಷ್ಕರ್ಮಗಳನ್ನು ಆಕರ್ಷಕವಾಗಿ ತೋರಿಸಲಾದ
ಮತ್ತು ಸ್ವೇಚ್ಛೆಗಳ ಹಿಂಬಾಲಕನಾದ ವ್ಯಕ್ತಿಯಂತಾಗುವನೇ?

أَفَمَن كَانَ عَلَىٰ بَيِّنَةٖ مِّن رَّبِّهِۦ كَمَن زُيِّنَ لَهُۥ
سُوٓءُ عَمَلِهِۦ وَٱتَّبَعُوٓاْ أَهۡوَآءَهُم ١٤

15. ದೇವಭಯವುಳ್ಳವರಿಗೆ ವಾಗ್ದಾನ ಮಾಡಲಾಗಿರುವ ಸ್ವರ್ಗವು
ಹೇಗಿದೆಯೆಂದರೆ ಅದರಲ್ಲಿ ವಾಸನೆ ಬದಲಾಗದ ನೀರಿನ
ಹೊಳೆಗಳಿವೆ, ರುಚಿ ಬದಲಾಗದ ಹಾಲಿನ ಹೊಳೆಗಳಿವೆ,
ಕುಡಿಯುವವರಿಗೆ ಆಹ್ಲಾದಕರವಾದ ಶರಾಬಿನ ನದಿಗಳಿವೆ ಮತ್ತು
ಶುದ್ಧವಾದ ಜೇನಿನ ನದಿಗಳಿವೆ. ಅಲ್ಲಿ ಅವರಿಗೆ ಎಲ್ಲಾ ತರಹದ
ಹಣ್ಣು-ಹಂಪಲುಗಳಿವೆ. ಅವರ ಪರಿಪಾಲಕನ (ಅಲ್ಲಾಹನ)
ಕಡೆಯ ಕ್ಷಮೆಯೂ ಇದೆ. (ಇವರ ಸ್ಥಿತಿಯು) ನರಕದಲ್ಲಿ
ಶಾಶ್ವತವಾಗಿ ವಾಸಿಸುವವನಂತೆಯೇ? ಅವರಿಗೆ ಕುಡಿಯಲು
ನೀಡಲಾಗುವ ಕುದಿಯುವ ನೀರು ಅವರ ಕರುಳುಗಳನ್ನು
ತುಂಡು ತುಂಡಾಗಿ ಕತ್ತರಿಸುತ್ತದೆ.

مَّثَلُ ٱلۡجَنَّةِ ٱلَّتِي وُعِدَ ٱلۡمُتَّقُونَۖ فِيهَآ أَنۡهَٰرٞ
مِّن مَّآءٍ غَيۡرِ ءَاسِنٖ وَأَنۡهَٰرٞ مِّن لَّبَنٖ لَّمۡ يَتَغَيَّرۡ
طَعۡمُهُۥ وَأَنۡهَٰرٞ مِّنۡ خَمۡرٖ لَّذَّةٖ لِّلشَّٰرِبِينَ وَأَنۡهَٰرٞ
مِّنۡ عَسَلٖ مُّصَفّٗىۖ وَلَهُمۡ فِيهَا مِن كُلِّ ٱلثَّمَرَٰتِ
وَمَغۡفِرَةٞ مِّن رَّبِّهِمۡۖ كَمَنۡ هُوَ خَٰلِدٞ فِي ٱلنَّارِ
وَسُقُواْ مَآءً حَمِيمٗا فَقَطَّعَ أَمۡعَآءَهُمۡ ١٥

16. ಅವರಲ್ಲಿ ಕೆಲವರು ನೀವು ಹೇಳುವುದನ್ನು ಕಿವಿಗೊಟ್ಟು
ಕೇಳುತ್ತಾರೆ. ಎಲ್ಲಿಯವರೆಗೆಂದರೆ, ಅವರು ನಿಮ್ಮ ಬಳಿಯಿಂದ
ಹೊರಟರೆ ಜ್ಞಾನಿಗಳೊಂದಿಗೆ (ಸಹಾಬಿಗಳೊಂದಿಗೆ) ಕೇಳುತ್ತಾರೆ:
“ಅವರು ಈಗ ಹೇಳಿದ್ದೇನು?” ಅವರ ಹೃದಯಗಳ ಮೇಲೆ
ಅಲ್ಲಾಹು ಮೊಹರು ಹಾಕಿದ್ದಾನೆ ಮತ್ತು ಅವರು ಅವರ
ಸ್ವೇಚ್ಛೆಗಳನ್ನು ಹಿಂಬಾಲಿಸುತ್ತಾರೆ.

وَمِنۡهُم مَّن يَسۡتَمِعُ إِلَيۡكَ حَتَّىٰٓ إِذَا خَرَجُواْ مِنۡ
عِندِكَ قَالُواْ لِلَّذِينَ أُوتُواْ ٱلۡعِلۡمَ مَاذَا قَالَ ءَانِفًاۚ
أُوْلَٰٓئِكَ ٱلَّذِينَ طَبَعَ ٱللَّهُ عَلَىٰ قُلُوبِهِمۡ وَٱتَّبَعُوٓاْ
أَهۡوَآءَهُمۡ ١٦

17. ಸನ್ಮಾರ್ಗ ಪಡೆದವರು ಯಾರೋ ಅವರಿಗೆ ಅಲ್ಲಾಹು ಇನ್ನೂ
ಹೆಚ್ಚು ಸನ್ಮಾರ್ಗವನ್ನು ದಯಪಾಲಿಸುತ್ತಾನೆ ಮತ್ತು ಅವರಿಗೆ
ಅವರ ದೇವಭಯವನ್ನು ನೀಡುತ್ತಾನೆ.

وَٱلَّذِينَ ٱهۡتَدَوۡاْ زَادَهُمۡ هُدٗى
وَءَاتَىٰهُمۡ تَقۡوَىٰهُمۡ ١٧

18. ಅಂತ್ಯಸಮಯವು ಅವರ ಬಳಿಗೆ ಹಠಾತ್ತನೆ ಬರುವುದನ್ನಲ್ಲದೆ
ಬೇರೆ ಏನನ್ನು ಅವರು ಕಾಯುತ್ತಿದ್ದಾರೆ? ಅದರ ಕೆಲವು ಚಿಹ್ನೆಗಳು

فَهَلۡ يَنظُرُونَ إِلَّا ٱلسَّاعَةَ أَن تَأۡتِيَهُم بَغۡتَةٗۖ

ಈಗಾಗಲೇ ಬಂದಿವೆ. ನಂತರ ಅವರ ಬಳಿಗೆ ಅಂತ್ಯಸಮಯವು ಬಂದಾಗ ಅವರಿಗೆ ಉಪದೇಶವು ಪ್ರಯೋಜನಪಡುವುದಾದರೂ ಹೇಗೆ?

فَقَدْ جَآءَ أَشْرَاطُهَا ۚ فَأَنَّىٰ لَهُمْ إِذَا جَآءَتْهُمْ ذِكْرَىٰهُمْ ﴿١٨﴾

---

**19.** ತಿಳಿಯಿರಿ! ಅಲ್ಲಾಹನ ಹೊರತು ಆರಾಧನೆಗೆ ಅರ್ಹರಾದ ಬೇರೆ ದೇವರಿಲ್ಲ ಮತ್ತು ನಿಮ್ಮ ಪಾಪಕ್ಕೆ ಕ್ಷಮೆಯಾಚಿಸಿರಿ. ಸತ್ಯವಿಶ್ವಾಸಿ ಪುರುಷರಿಗೆ ಮತ್ತು ಸ್ತ್ರೀಯರಿಗೆ ಕ್ಷಮೆಯಾಚಿಸಿರಿ. ಅಲ್ಲಾಹು ನಿಮ್ಮ ಚಲನವಲನಗಳನ್ನು ಮತ್ತು ವಾಸಸ್ಥಳವನ್ನು ತಿಳಿದಿದ್ದಾನೆ.

فَٱعْلَمْ أَنَّهُۥ لَآ إِلَٰهَ إِلَّا ٱللَّهُ وَٱسْتَغْفِرْ لِذَنۢبِكَ وَلِلْمُؤْمِنِينَ وَٱلْمُؤْمِنَٰتِ ۗ وَٱللَّهُ يَعْلَمُ مُتَقَلَّبَكُمْ وَمَثْوَىٰكُمْ ﴿١٩﴾

---

**20.** ಸತ್ಯವಿಶ್ವಾಸಿಗಳು ಕೇಳುತ್ತಾರೆ: “ಒಂದು ಅಧ್ಯಾಯವು ಏಕೆ ಅವತೀರ್ಣವಾಗಿಲ್ಲ?” ಆದರೆ ಖಚಿತ ನಿಯಮಗಳಿರುವ ಒಂದು ಅಧ್ಯಾಯವು ಅವತೀರ್ಣವಾಗಿ ಅದರಲ್ಲಿ ಯುದ್ಧದ ಬಗ್ಗೆ ಉಲ್ಲೇಖಿಸಲಾದರೆ ಮೃತ್ಯು ಆವರಿಸಿ ಪ್ರಜ್ಞೆ ಕಳಕೊಂಡ ವ್ಯಕ್ತಿಯು ನೋಡುವಂತೆ, ಹೃದಯಗಳಲ್ಲಿ ರೋಗವಿರುವವರು ನಿಮ್ಮ ಕಡೆಗೆ ನೋಡುವುದನ್ನು ನೀವು ಕಾಣುವಿರಿ. ಅವರಿಗೆ ಅದು ಅತ್ಯಂತ ಅರ್ಹವಾಗಿದೆ.

وَيَقُولُ ٱلَّذِينَ ءَامَنُوا۟ لَوْلَا نُزِّلَتْ سُورَةٌ ۖ فَإِذَآ أُنزِلَتْ سُورَةٌ مُّحْكَمَةٌ وَذُكِرَ فِيهَا ٱلْقِتَالُ ۙ رَأَيْتَ ٱلَّذِينَ فِى قُلُوبِهِم مَّرَضٌ يَنظُرُونَ إِلَيْكَ نَظَرَ ٱلْمَغْشِىِّ عَلَيْهِ مِنَ ٱلْمَوْتِ ۖ فَأَوْلَىٰ لَهُمْ ﴿٢٠﴾

---

**21.** ಆಜ್ಞಾಪಾಲನೆ ಮಾಡುವುದು ಹಾಗೂ ಉತ್ತಮ ಮಾತನ್ನು ಹೇಳುವುದು. ನಂತರ ವಿಷಯವನ್ನು ತೀರ್ಮಾನಿಸಲಾದಾಗ ಅವರು ಅಲ್ಲಾಹನಿಗೆ ನಿಷ್ಠೆಯನ್ನು ತೋರಿಸಿದರೆ ಅದು ಅವರಿಗೆ ಶ್ರೇಷ್ಠವಾಗಿದೆ.

طَاعَةٌ وَقَوْلٌ مَّعْرُوفٌ ۚ فَإِذَا عَزَمَ ٱلْأَمْرُ فَلَوْ صَدَقُوا۟ ٱللَّهَ لَكَانَ خَيْرًا لَّهُمْ ﴿٢١﴾

---

**22.** ನೀವು (ಯುದ್ಧದಿಂದ) ವಿಮುಖರಾದರೆ ಬಹುಶಃ ನೀವು ಭೂಮಿಯಲ್ಲಿ ಕಿಡಿಗೇಡಿತನ ಮಾಡುತ್ತಲೂ ಮತ್ತು ನಿಮ್ಮ ಕುಟುಂಬ ಸಂಬಂಧಗಳನ್ನು ಕಡಿಯುತ್ತಲೂ ಇರುವಿರಾ?

فَهَلْ عَسَيْتُمْ إِن تَوَلَّيْتُمْ أَن تُفْسِدُوا۟ فِى ٱلْأَرْضِ وَتُقَطِّعُوٓا۟ أَرْحَامَكُمْ ﴿٢٢﴾

---

**23.** ಅಂತಹ ಜನರನ್ನು ಅಲ್ಲಾಹು ಶಪಿಸಿದ್ದಾನೆ, ಅವರನ್ನು ಕಿವುಡರನ್ನಾಗಿ ಮಾಡಿದ್ದಾನೆ ಮತ್ತು ಅವರನ್ನು ಕಣ್ಣು ಕಾಣದವರಂತೆ ಮಾಡಿದ್ದಾನೆ.

أُو۟لَٰٓئِكَ ٱلَّذِينَ لَعَنَهُمُ ٱللَّهُ فَأَصَمَّهُمْ وَأَعْمَىٰٓ أَبْصَٰرَهُمْ ﴿٢٣﴾

---

**24.** ಅವರು ಕುರ್‌ಆನನ್ನು ಮನನ ಮಾಡುವುದಿಲ್ಲವೇ? ಅಥವಾ (ಅವರ) ಹೃದಯಗಳಿಗೆ ಬೀಗ ಜಡಿಯಲಾಗಿದೆಯೇ?

أَفَلَا يَتَدَبَّرُونَ ٱلْقُرْءَانَ أَمْ عَلَىٰ قُلُوبٍ أَقْفَالُهَآ ﴿٢٤﴾

---

**25.** ನಿಶ್ಚಯವಾಗಿಯೂ ಸನ್ಮಾರ್ಗವು ಸ್ಪಷ್ಟವಾದ ಬಳಿಕ ಅದರಿಂದ ಮುಖ ತಿರುಗಿಸಿ ನಡೆದವರು ಯಾರೋ ಅವರಿಗೆ ಶೈತಾನನು (ಅವರ ಕೃತ್ಯಗಳನ್ನು) ಸುಂದರವಾಗಿ ತೋರಿಸಿದ್ದಾನೆ ಮತ್ತು ಅವರಿಗೆ (ವ್ಯರ್ಥ ನಿರೀಕ್ಷೆಗಳನ್ನು) ದೀರ್ಘಗೊಳಿಸಿಕೊಟ್ಟಿದ್ದಾನೆ.

إِنَّ ٱلَّذِينَ ٱرْتَدُّوا۟ عَلَىٰٓ أَدْبَٰرِهِم مِّنۢ بَعْدِ مَا تَبَيَّنَ لَهُمُ ٱلْهُدَى ۙ ٱلشَّيْطَٰنُ سَوَّلَ لَهُمْ وَأَمْلَىٰ لَهُمْ ﴿٢٥﴾

26. ಅದೇಕೆಂದರೆ ಅವರು (ಕಪಟವಿಶ್ವಾಸಿಗಳು) ಅಲ್ಲಾಹು ಅವತೀರ್ಣಗೊಳಿಸಿದ್ದನ್ನು ದ್ವೇಷಿಸುವವರೊಡನೆ (ಯಹೂದಿಗಳೊಡನೆ) ಹೇಳಿದರು: "ಕೆಲವು ವಿಷಯಗಳಲ್ಲಿ ನಾವು ನಿಮ್ಮ ಮಾತನ್ನು ಕೇಳುತ್ತೇವೆ." ಅವರು ರಹಸ್ಯವಾಗಿಡುವುದನ್ನು ಅಲ್ಲಾಹು ತಿಳಿಯುತ್ತಾನೆ.

ذَٰلِكَ بِأَنَّهُمْ قَالُواْ لِلَّذِينَ كَرِهُواْ مَا نَزَّلَ ٱللَّهُ سَنُطِيعُكُمْ فِي بَعْضِ ٱلْأَمْرِۖ وَٱللَّهُ يَعْلَمُ إِسْرَارَهُمْ ﴿٢٦﴾

27. ಹಾಗಾದರೆ ದೇವದೂತರುಗಳು ಅವರ ಮುಖ ಮತ್ತು ಬೆನ್ನುಗಳಿಗೆ ಥಳಿಸುತ್ತಾ ಅವರನ್ನು ಆತ್ಮವನ್ನು ವಶಪಡಿಸುವಾಗ ಅವರ ಸ್ಥಿತಿ ಹೇಗಿರಬಹುದು?

فَكَيْفَ إِذَا تَوَفَّتْهُمُ ٱلْمَلَٰٓئِكَةُ يَضْرِبُونَ وُجُوهَهُمْ وَأَدْبَٰرَهُمْ ﴿٢٧﴾

28. ಅದೇಕೆಂದರೆ ಅವರು ಅಲ್ಲಾಹನಿಗೆ ಕೋಪ ತರುವ ವಿಷಯಗಳನ್ನು ಅನುಸರಿಸಿದರು ಮತ್ತು ಅವನು ಇಷ್ಟಪಡುವುದನ್ನು ದ್ವೇಷಿಸಿದರು. ಆದ್ದರಿಂದ ಅವನು ಅವರ ಕರ್ಮಗಳನ್ನು ನಿಷ್ಫಲಗೊಳಿಸಿದನು.

ذَٰلِكَ بِأَنَّهُمُ ٱتَّبَعُواْ مَآ أَسْخَطَ ٱللَّهَ وَكَرِهُواْ رِضْوَٰنَهُۥ فَأَحْبَطَ أَعْمَٰلَهُمْ ﴿٢٨﴾

29. ಹೃದಯಗಳಲ್ಲಿ ರೋಗವಿರುವವರು ಅಲ್ಲಾಹು ಅವರ ಆಂತರ್ಯದಲ್ಲಿರುವ ಹಗೆಯನ್ನು ಬಹಿರಂಗಪಡಿಸುವುದಿಲ್ಲವೆಂದು ಭಾವಿಸಿದ್ದಾರೆಯೇ?

أَمْ حَسِبَ ٱلَّذِينَ فِي قُلُوبِهِم مَّرَضٌ أَن لَّن يُخْرِجَ ٱللَّهُ أَضْغَٰنَهُمْ ﴿٢٩﴾

30. ನಾವು ಇಚ್ಛಿಸಿದರೆ ಅವರನ್ನು ನಿಮಗೆ ತೋರಿಸುತ್ತಿದ್ದೆವು. ಆಗ ಅವರ ಲಕ್ಷಣಗಳಿಂದ ನೀವು ಅವರನ್ನು ಗುರುತಿಸುತ್ತಿದ್ದಿರಿ. ಅವರು ಮಾತನಾಡುವ ಶೈಲಿಯಿಂದಲೂ ನಿಮಗೆ ಖಂಡಿತ ಅವರನ್ನು ಗುರುತಿಸಬಹುದು. ಅಲ್ಲಾಹು ನಿಮ್ಮ ಎಲ್ಲಾ ಕರ್ಮಗಳನ್ನು ತಿಳಿಯುತ್ತಾನೆ.

وَلَوْ نَشَآءُ لَأَرَيْنَٰكَهُمْ فَلَعَرَفْتَهُم بِسِيمَٰهُمْۚ وَلَتَعْرِفَنَّهُمْ فِي لَحْنِ ٱلْقَوْلِۚ وَٱللَّهُ يَعْلَمُ أَعْمَٰلَكُمْ ﴿٣٠﴾

31. ನಿಶ್ಚಯವಾಗಿಯೂ ನಾವು ನಿಮ್ಮನ್ನು ಪರೀಕ್ಷಿಸುವೆವು. ನಿಮ್ಮಲ್ಲಿರುವ ಹೋರಾಟಗಾರರು ಯಾರು ಮತ್ತು ಸಹಿಷ್ಣುತೆಯುಳ್ಳವರು ಯಾರು ಎಂದು ಗುರುತಿಸಿ ತಿಳಿಯುವ ತನಕ ಮತ್ತು ನಿಮ್ಮ ವಿಚಾರಗಳನ್ನು ಪರೀಕ್ಷಿಸಿ ತಿಳಿಯುವ ತನಕ.

وَلَنَبْلُوَنَّكُمْ حَتَّىٰ نَعْلَمَ ٱلْمُجَٰهِدِينَ مِنكُمْ وَٱلصَّٰبِرِينَ وَنَبْلُوَاْ أَخْبَارَكُمْ ﴿٣١﴾

32. ನಿಶ್ಚಯವಾಗಿಯೂ ಸತ್ಯನಿಷೇಧಿಗಳು, ಅಲ್ಲಾಹನ ಮಾರ್ಗದಿಂದ ಜನರನ್ನು ತಡೆದವರು ಮತ್ತು ಸನ್ಮಾರ್ಗವು ಸ್ಪಷ್ಟವಾದ ಬಳಿಕ ಸಂದೇಶವಾಹಕರಿಗೆ ವಿರುದ್ಧವಾಗಿ ಚಲಿಸಿದವರು ಯಾರೋ ಅವರು ಅಲ್ಲಾಹನಿಗೆ ಯಾವುದೇ ತೊಂದರೆ ಮಾಡಲಾರರು. ಅಲ್ಲಾಹು ಅವರ ಕರ್ಮಗಳನ್ನು ಸದ್ಯವೇ ನಿಷ್ಫಲಗೊಳಿಸುವನು.

إِنَّ ٱلَّذِينَ كَفَرُواْ وَصَدُّواْ عَن سَبِيلِ ٱللَّهِ وَشَآقُّواْ ٱلرَّسُولَ مِنۢ بَعْدِ مَا تَبَيَّنَ لَهُمُ ٱلْهُدَىٰ لَن يَضُرُّواْ ٱللَّهَ شَيْـًٔا وَسَيُحْبِطُ أَعْمَٰلَهُمْ ﴿٣٢﴾

33. ಓ ಸತ್ಯವಿಶ್ವಾಸಿಗಳೇ! ಅಲ್ಲಾಹನ ಆಜ್ಞೆಗಳನ್ನು ಅನುಸರಿಸಿರಿ ಮತ್ತು ಸಂದೇಶವಾಹಕರ ಆಜ್ಞೆಗಳನ್ನು ಅನುಸರಿಸಿರಿ. ನಿಮ್ಮ

يَٰٓأَيُّهَا ٱلَّذِينَ ءَامَنُوٓاْ أَطِيعُواْ ٱللَّهَ وَأَطِيعُواْ ٱلرَّسُولَ وَلَا تُبْطِلُوٓاْ أَعْمَٰلَكُمْ ﴿٣٣﴾

ಕರ್ಮಗಳನ್ನು ನಿಷ್ಫಲಗೊಳಿಸಬೇಡಿ.

| | |
|---|---|
| **34.** ನಿಶ್ಚಯವಾಗಿಯೂ ಸತ್ಯನಿಷೇಧಿಗಳು ಮತ್ತು ಅಲ್ಲಾಹನ ಮಾರ್ಗದಿಂದ ಜನರನ್ನು ತಡೆದವರು ಹಾಗೂ ನಂತರ ಸತ್ಯನಿಷೇ-ಧಿಗಳಾಗಿಯೇ ಸಾವನ್ನಪ್ಪಿದವರು ಯಾರೋ ಅವರಿಗೆ ಅಲ್ಲಾಹು ಎಂದೂ ಕ್ಷಮಿಸುವುದಿಲ್ಲ. | إِنَّ ٱلَّذِينَ كَفَرُواْ وَصَدُّواْ عَن سَبِيلِ ٱللَّهِ ثُمَّ مَاتُواْ وَهُمۡ كُفَّارٞ فَلَن يَغۡفِرَ ٱللَّهُ لَهُمۡ ٣٤ |
| **35.** ಆದ್ದರಿಂದ ನೀವು ಬಲಹೀನರಂತೆ ಶಾಂತಿ-ಸಂಧಾನಕ್ಕೆ ಮುಂದಾಗಬೇಡಿ. ವಾಸ್ತವವಾಗಿ ನೀವೇ ಶ್ರೇಷ್ಠರು. ಅಲ್ಲಾಹು ನಿಮ್ಮ ಜೊತೆಗಿದ್ದಾನೆ. ಅವನು ನಿಮ್ಮ ಕರ್ಮಗಳನ್ನು ಎಂದಿಗೂ ವ್ಯರ್ಥಗೊಳಿಸುವುದಿಲ್ಲ. | فَلَا تَهِنُواْ وَتَدۡعُوٓاْ إِلَى ٱلسَّلۡمِ وَأَنتُمُ ٱلۡأَعۡلَوۡنَ وَٱللَّهُ مَعَكُمۡ وَلَن يَتِرَكُمۡ أَعۡمَٰلَكُمۡ ٣٥ |
| **36.** ನಿಶ್ಚಯವಾಗಿಯೂ ಇಹಲೋಕ ಜೀವನವು ಆಟ ಮತ್ತು ಮನೋರಂಜನೆಯಾಗಿದೆ. ನೀವು ವಿಶ್ವಾಸವಿಟ್ಟು ದೇವಭಯದಿಂದ ಜೀವಿಸುವುದಾದರೆ ಅವನು ನಿಮ್ಮ ಪ್ರತಿಫಲವನ್ನು ನಿಮಗೆ ಕೊಡುವನು. ಅವನು ನಿಮ್ಮಿಂದ ನಿಮ್ಮ ಆಸ್ತಿಯನ್ನು ಕೇಳುವುದಿಲ್ಲ. | إِنَّمَا ٱلۡحَيَوٰةُ ٱلدُّنۡيَا لَعِبٞ وَلَهۡوٞۚ وَإِن تُؤۡمِنُواْ وَتَتَّقُواْ يُؤۡتِكُمۡ أُجُورَكُمۡ وَلَا يَسۡـَٔلۡكُمۡ أَمۡوَٰلَكُمۡ ٣٦ |
| **37.** ಅವನೇನಾದರೂ ನಿಮ್ಮಿಂದ ನಿಮ್ಮ ಸಂಪತ್ತನ್ನು ಕೇಳಿದರೆ ಮತ್ತು ಒತ್ತಾಯಪಡಿಸಿದರೆ, ನೀವು ಜಿಪುಣತನ ತೋರುತ್ತೀರಿ ಮತ್ತು ನಿಮ್ಮ ಆಂತರ್ಯದಲ್ಲಿರುವ ಹಗೆಯನ್ನು ಹೊರಹಾಕುತ್ತೀರಿ. | إِن يَسۡـَٔلۡكُمُوهَا فَيُحۡفِكُمۡ تَبۡخَلُواْ وَيُخۡرِجۡ أَضۡغَٰنَكُمۡ ٣٧ |
| **38.** ತಿಳಿಯಿರಿ! ನಿಮ್ಮನ್ನು ಅಲ್ಲಾಹನ ಮಾರ್ಗದಲ್ಲಿ ಖರ್ಚು ಮಾಡಲು ಕರೆಯಲಾಗುತ್ತದೆ. ಆಗ ನಿಮ್ಮಲ್ಲಿ ಕೆಲವರು ಜಿಪುಣತನ ತೋರುತ್ತಾರೆ. ಯಾರಾದರೂ ಜಿಪುಣತನ ತೋರಿದರೆ ಅವನು ಜಿಪುಣತನ ತೋರುವುದು ಸ್ವಯಂ ಅವನ ವಿರುದ್ಧವೇ ಆಗಿದೆ. ಅಲ್ಲಾಹನಿಗೆ ಯಾರ ಅಗತ್ಯವೂ ಇಲ್ಲ. ಆದರೆ ನಿಮಗೆ ಅಲ್ಲಾಹನ ಅಗತ್ಯವಿದೆ. ನೀವೇನಾದರೂ ತಿರುಗಿ ನಡೆದರೆ ಅವನು ನಿಮಗೆ ಬದಲಿಯಾಗಿ ನಿಮ್ಮ ಹೊರತಾದ ಬೇರೆ ಜನರನ್ನು ತರುವನು. ನಂತರ ಅವರು ನಿಮ್ಮಂತೆ ಆಗಿರಲಾರರು. | هَٰٓأَنتُمۡ هَٰٓؤُلَآءِ تُدۡعَوۡنَ لِتُنفِقُواْ فِي سَبِيلِ ٱللَّهِ فَمِنكُم مَّن يَبۡخَلُۖ وَمَن يَبۡخَلۡ فَإِنَّمَا يَبۡخَلُ عَن نَّفۡسِهِۦۚ وَٱللَّهُ ٱلۡغَنِيُّ وَأَنتُمُ ٱلۡفُقَرَآءُۚ وَإِن تَتَوَلَّوۡاْ يَسۡتَبۡدِلۡ قَوۡمًا غَيۡرَكُمۡ ثُمَّ لَا يَكُونُوٓاْ أَمۡثَٰلَكُم ٣٨ |

# 48. ಅಲ್-ಫತ್‌ಹ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. (ಪ್ರವಾದಿಯವರೇ) ನಿಶ್ಚಯವಾಗಿಯೂ ನಾವು ನಿಮಗೆ ಸ್ಪಷ್ಟ ವಿಜಯವನ್ನು[1] ದಯಪಾಲಿಸಿದ್ದೇವೆ.

إِنَّا فَتَحۡنَا لَكَ فَتۡحٗا مُّبِينٗا ١

2. ಹಿಂದೆ ಸಂಭವಿಸಿರುವ ನಿಮ್ಮ ತಪ್ಪುಗಳನ್ನು ಮತ್ತು ಮುಂದೆ ಸಂಭವಿಸಲಿರುವುದನ್ನು ಅಲ್ಲಾಹು ನಿಮಗೆ ಕ್ಷಮಿಸುವುದಕ್ಕಾಗಿ, ಅವನ ಅನುಗ್ರಹವನ್ನು ನಿಮಗೆ ಪೂರ್ಣಗೊಳಿಸುವುದಕ್ಕಾಗಿ ಮತ್ತು ನಿಮ್ಮನ್ನು ನೇರಮಾರ್ಗದಲ್ಲಿ ಮುನ್ನಡೆಸುವುದಕ್ಕಾಗಿ.

لِّيَغۡفِرَ لَكَ ٱللَّهُ مَا تَقَدَّمَ مِن ذَنۢبِكَ وَمَا تَأَخَّرَ وَيُتِمَّ نِعۡمَتَهُۥ عَلَيۡكَ وَيَهۡدِيَكَ صِرَٰطٗا مُّسۡتَقِيمٗا ٢

3. ಅಲ್ಲಾಹು ನಿಮಗೆ ಪ್ರಬಲವಾದ ಸಹಾಯವನ್ನು ನೀಡುವುದಕ್ಕಾಗಿ.

وَيَنصُرَكَ ٱللَّهُ نَصۡرًا عَزِيزًا ٣

4. ಅವನೇ ಸತ್ಯವಿಶ್ವಾಸಿಗಳ ಹೃದಯಗಳಲ್ಲಿ ಶಾಂತಿಯನ್ನು ಇಳಿಸಿದವನು. ಅವರಲ್ಲಿರುವ ಸತ್ಯವಿಶ್ವಾಸಕ್ಕೆ ಇನ್ನಷ್ಟು ಸತ್ಯವಿಶ್ವಾಸವು ಹೆಚ್ಚಾಗುವುದಕ್ಕಾಗಿ. ಭೂಮ್ಯಾಕಾಶಗಳ ಸೈನ್ಯಗಳು ಅಲ್ಲಾಹನಿಗೆ ಸೇರಿದ್ದು. ಅಲ್ಲಾಹು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ.

هُوَ ٱلَّذِيٓ أَنزَلَ ٱلسَّكِينَةَ فِي قُلُوبِ ٱلۡمُؤۡمِنِينَ لِيَزۡدَادُوٓاْ إِيمَٰنٗا مَّعَ إِيمَٰنِهِمۡۗ وَلِلَّهِ جُنُودُ ٱلسَّمَٰوَٰتِ وَٱلۡأَرۡضِۚ وَكَانَ ٱللَّهُ عَلِيمًا حَكِيمٗا ٤

5. ಸತ್ಯವಿಶ್ವಾಸಿ ಪುರುಷರು ಮತ್ತು ಸತ್ಯವಿಶ್ವಾಸಿ ಸ್ತ್ರೀಯರನ್ನು ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳಲ್ಲಿ ಶಾಶ್ವತವಾಸಿಗಳಾಗಿ ಪ್ರವೇಶಗೊಳಿಸುವುದಕ್ಕಾಗಿ ಮತ್ತು ಅವರ ಕೆಡುಕುಗಳನ್ನು ಅಳಿಸುವುದಕ್ಕಾಗಿ. ಅದು ಅಲ್ಲಾಹನ ದೃಷ್ಟಿಯಲ್ಲಿ ಅತಿದೊಡ್ಡ ವಿಜಯವಾಗಿದೆ.

لِّيُدۡخِلَ ٱلۡمُؤۡمِنِينَ وَٱلۡمُؤۡمِنَٰتِ جَنَّٰتٖ تَجۡرِي مِن تَحۡتِهَا ٱلۡأَنۡهَٰرُ خَٰلِدِينَ فِيهَا وَيُكَفِّرَ عَنۡهُمۡ سَيِّـَٔاتِهِمۡۚ وَكَانَ ذَٰلِكَ عِندَ ٱللَّهِ فَوۡزًا عَظِيمٗا ٥

6. ಅಲ್ಲಾಹನ ವಿಷಯದಲ್ಲಿ ಕೆಟ್ಟ ಭಾವನೆಗಳನ್ನು ಇಟ್ಟುಕೊಂಡಿರುವ ಕಪಟವಿಶ್ವಾಸಿ ಪುರುಷರು ಮತ್ತು ಕಪಟವಿಶ್ವಾಸಿ ಸ್ತ್ರೀಯರನ್ನು, ಬಹುದೇವವಿಶ್ವಾಸಿ ಪುರುಷರು ಮತ್ತು ಬಹುದೇವವಿಶ್ವಾಸಿ ಸ್ತ್ರೀಯರನ್ನು ಶಿಕ್ಷಿಸುವುದಕ್ಕಾಗಿ. ಅವರ ಮೇಲೆ ಕೆಡುಕಿನ ಆವರಣವಿದೆ. ಅಲ್ಲಾಹು ಅವರ ಮೇಲೆ ಕೋಪಿಸಿದ್ದಾನೆ, ಅವರನ್ನು ಶಪಿಸಿದ್ದಾನೆ ಮತ್ತು ಅವರಿಗೆ ನರಕಾಗ್ನಿಯನ್ನು ಸಿದ್ಧಗೊಳಿಸಿದ್ದಾನೆ. ಆ ಗಮ್ಯಸ್ಥಾನವು ಬಹಳ ನಿಕೃಷ್ಟವಾಗಿದೆ.

وَيُعَذِّبَ ٱلۡمُنَٰفِقِينَ وَٱلۡمُنَٰفِقَٰتِ وَٱلۡمُشۡرِكِينَ وَٱلۡمُشۡرِكَٰتِ ٱلظَّآنِّينَ بِٱللَّهِ ظَنَّ ٱلسَّوۡءِۚ عَلَيۡهِمۡ دَآئِرَةُ ٱلسَّوۡءِۖ وَغَضِبَ ٱللَّهُ عَلَيۡهِمۡ وَلَعَنَهُمۡ وَأَعَدَّ لَهُمۡ جَهَنَّمَۖ وَسَآءَتۡ مَصِيرٗا ٦

---

[1] ಸ್ಪಷ್ಟ ವಿಜಯ ಎಂದರೆ ಹುದೈಬಿಯಾ ಒಪ್ಪಂದ. ಈ ಒಪ್ಪಂದದಿಂದಾಗಿ ಮುಸ್ಲಿಮರಿಗೆ ನಾಲ್ಕೂ ಕಡೆ ನಿರ್ಭಯವಾಗಿ ಓಡಾಡಿ ಇಸ್ಲಾಂ ಧರ್ಮವನ್ನು ಪ್ರಚಾರ ಮಾಡಲು ಸಾಧ್ಯವಾಯಿತು. ಇದರಿಂದ ಇಸ್ಲಾಂ ಧರ್ಮದ ಬಗ್ಗೆ ಹೆಚ್ಚು ಹೆಚ್ಚು ಜನರು ಆಕರ್ಷಿತರಾದರು. ಇದು ನಂತರ ಮಕ್ಕಾ ವಿಜಯಕ್ಕೆ ನಾಂದಿಯಾಯಿತು.

7. ಭೂಮ್ಯಾಕಾಶಗಳ ಸೈನ್ಯಗಳು ಅಲ್ಲಾಹನಿಗೆ ಸೇರಿದ್ದು. ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَلِلَّهِ جُنُودُ ٱلسَّمَٰوَٰتِ وَٱلۡأَرۡضِۚ وَكَانَ ٱللَّهُ
عَزِيزًا حَكِيمًا ٧

8. ನಿಶ್ಚಯವಾಗಿಯೂ ನಾವು ನಿಮ್ಮನ್ನು ಸಾಕ್ಷಿಯಾಗಿ, ಸುವಾರ್ತೆ ನೀಡುವವರಾಗಿ ಮತ್ತು ಮುನ್ನೆಚ್ಚರಿಕೆ ನೀಡುವವರಾಗಿ ಕಳುಹಿಸಿದ್ದೇವೆ.

إِنَّآ أَرۡسَلۡنَٰكَ شَٰهِدٗا وَمُبَشِّرٗا وَنَذِيرٗا ٨

9. ನೀವು (ಜನರು) ಅಲ್ಲಾಹನಲ್ಲಿ ಮತ್ತು ಅವನ ಸಂದೇಶವಾಹಕ-ರಲ್ಲಿ ವಿಶ್ವಾಸವಿಡುವುದಕ್ಕಾಗಿ, ಅವರಿಗೆ (ಪ್ರವಾದಿಗೆ) ಸಹಾಯ ಮಾಡುವುದಕ್ಕಾಗಿ, ಅವರನ್ನು ಗೌರವಿಸುವುದಕ್ಕಾಗಿ ಮತ್ತು ಮುಂಜಾನೆ ಹಾಗೂ ಸಂಜೆ ಅವನ (ಅಲ್ಲಾಹನ) ಮಹತ್ವವನ್ನು ಕೊಂಡಾಡುವುದಕ್ಕಾಗಿ.

لِّتُؤۡمِنُواْ بِٱللَّهِ وَرَسُولِهِۦ وَتُعَزِّرُوهُ وَتُوَقِّرُوهُۚ
وَتُسَبِّحُوهُ بُكۡرَةٗ وَأَصِيلًا ٩

10. ನಿಮ್ಮ ಮುಂದೆ ಪ್ರತಿಜ್ಞೆ ಮಾಡುವವರು ನಿಶ್ಚಯವಾಗಿಯೂ ಅಲ್ಲಾಹನ ಮುಂದೆ ಪ್ರತಿಜ್ಞೆ ಮಾಡುತ್ತಿದ್ದಾರೆ. ಅವರ ಕೈಗಳ ಮೇಲೆ ಅಲ್ಲಾಹನ ಕೈ ಇದೆ. ಯಾರು ತನ್ನ ಪ್ರತಿಜ್ಞೆಯನ್ನು ಮುರಿಯುತ್ತಾನೋ ಅವನು ಅವನಿಗೆ ವಿರುದ್ಧವಾಗಿಯೇ ಅದನ್ನು ಮುರಿಯುತ್ತಾನೆ. ಯಾರು ಅಲ್ಲಾಹನ ಮುಂದೆ ಮಾಡಿದ ಕರಾರನ್ನು ಪೂರ್ಣಗೊಳಿಸುತ್ತಾನೋ ಅವನಿಗೆ ಅಲ್ಲಾಹು ಮಹಾ ಪ್ರತಿಫಲವನ್ನು ನೀಡುತ್ತಾನೆ.

إِنَّ ٱلَّذِينَ يُبَايِعُونَكَ إِنَّمَا يُبَايِعُونَ ٱللَّهَ يَدُ
ٱللَّهِ فَوۡقَ أَيۡدِيهِمۡۚ فَمَن نَّكَثَ فَإِنَّمَا يَنكُثُ
عَلَىٰ نَفۡسِهِۦۖ وَمَنۡ أَوۡفَىٰ بِمَا عَٰهَدَ عَلَيۡهُ ٱللَّهَ
فَسَيُؤۡتِيهِ أَجۡرًا عَظِيمٗا ١٠

11. ಮರುಭೂಮಿ ನಿವಾಸಿಗಳಲ್ಲಿ ಹಿಂದೆ ಉಳಿದವರು ನಿಮ್ಮೊಡನೆ ಹೇಳುತ್ತಾರೆ: “ನಮ್ಮ ಆಸ್ತಿ ಮತ್ತು ಕುಟುಂಬಗಳು ನಮ್ಮನ್ನು ಕಾರ್ಯಮಗ್ನರನ್ನಾಗಿ ಮಾಡಿವೆ. ಆದ್ದರಿಂದ ನೀವು ನಮಗೋಸ್ಕರ ಕ್ಷಮೆಯಾಚಿಸಿರಿ.” ಅವರು ತಮ್ಮ ಹೃದಯಗಳಲ್ಲಿ ಇಲ್ಲದಿರು-ವುದನ್ನು ತಮ್ಮ ನಾಲಗೆಗಳ ಮೂಲಕ ಹೇಳುತ್ತಾರೆ. ಹೇಳಿರಿ: “ಅಲ್ಲಾಹು ನಿಮಗೆ ಏನಾದರೂ ತೊಂದರೆ ಮಾಡಲು ಬಯಸಿದರೆ ಅಥವಾ ನಿಮಗೆ ಏನಾದರೂ ಪ್ರಯೋಜನ ನೀಡಲು ಬಯಸಿದರೆ ನಿಮಗೋಸ್ಕರ ಅಲ್ಲಾಹನ ಕಡೆಯಿಂದ ಬರುವ ಯಾವುದೇ ವಸ್ತುವಿನ ಮೇಲೆ ಅಧಿಕಾರ ಹೊಂದಿರುವವರು ಯಾರು?” ಅಲ್ಲ, ವಾಸ್ತವವಾಗಿ, ನೀವು ಮಾಡುತ್ತಿರುವ ಕರ್ಮಗಳನ್ನು ಅಲ್ಲಾಹು ಸೂಕ್ಷ್ಮವಾಗಿ ತಿಳಿಯುತ್ತಾನೆ.

سَيَقُولُ لَكَ ٱلۡمُخَلَّفُونَ مِنَ ٱلۡأَعۡرَابِ
شَغَلَتۡنَآ أَمۡوَٰلُنَا وَأَهۡلُونَا فَٱسۡتَغۡفِرۡ لَنَاۚ يَقُولُونَ
بِأَلۡسِنَتِهِم مَّا لَيۡسَ فِي قُلُوبِهِمۡۚ قُلۡ فَمَن يَمۡلِكُ
لَكُم مِّنَ ٱللَّهِ شَيۡـًٔا إِنۡ أَرَادَ بِكُمۡ ضَرًّا أَوۡ
أَرَادَ بِكُمۡ نَفۡعَۢاۚ بَلۡ كَانَ ٱللَّهُ بِمَا تَعۡمَلُونَ
خَبِيرًا ١١

12. ಸಂದೇಶವಾಹಕರು ಮತ್ತು ಸತ್ಯವಿಶ್ವಾಸಿಗಳು ಎಂದಿಗೂ ಅವರ ಕುಟುಂಬಕ್ಕೆ ಮರಳಿ ಬರುವುದಿಲ್ಲ ಎಂದೇ ನೀವು ಭಾವಿಸಿದಿರಿ. ಅದನ್ನು ನಿಮ್ಮ ಹೃದಯಗಳಲ್ಲಿ ಅಂದವಾಗಿ

بَلۡ ظَنَنتُمۡ أَن لَّن يَنقَلِبَ ٱلرَّسُولُ وَٱلۡمُؤۡمِنُونَ
إِلَىٰٓ أَهۡلِيهِمۡ أَبَدٗا وَزُيِّنَ ذَٰلِكَ فِي قُلُوبِكُمۡ

ತೋರಿಸಿಕೊಡಲಾಗಿತ್ತು. ನೀವು ಕೆಟ್ಟ ಭಾವನೆಗಳನ್ನು ಹೊಂದಿದ್ದಿರಿ. ನೀವು ನಾಶಕ್ಕೆ ತುತ್ತಾದ ಜನರಾಗಿದ್ದೀರಿ.

وَظَنَنتُمْ ظَنَّ ٱلسَّوْءِ وَكُنتُمْ قَوْمًۢا بُورًا ١٢

---

13. ಯಾರು ಅಲ್ಲಾಹನಲ್ಲಿ ಮತ್ತು ಅವನ ಸಂದೇಶವಾಹಕರಲ್ಲಿ ವಿಶ್ವಾಸವಿಡುವುದಿಲ್ಲವೋ ಅಂತಹ ಸತ್ಯನಿಷೇಧಿಗಳಿಗೆ ನಾವು ಜ್ವಲಿಸುವ ನರಕಾಗ್ನಿಯನ್ನು ಸಿದ್ಧಗೊಳಿಸಿದ್ದೇವೆ.

وَمَن لَّمْ يُؤْمِنۢ بِٱللَّهِ وَرَسُولِهِۦ فَإِنَّآ أَعْتَدْنَا لِلْكَـٰفِرِينَ سَعِيرًا ١٣

---

14. ಭೂಮ್ಯಾಕಾಶಗಳ ಸಾರ್ವಭೌಮತ್ವವು ಅಲ್ಲಾಹನಿಗೆ ಸೇರಿದ್ದು. ಅವನು ಇಚ್ಛಿಸುವವರಿಗೆ ಕ್ಷಮಿಸುತ್ತಾನೆ ಮತ್ತು ಅವನು ಇಚ್ಛಿಸುವವರನ್ನು ಶಿಕ್ಷಿಸುತ್ತಾನೆ. ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

وَلِلَّهِ مُلْكُ ٱلسَّمَـٰوَٰتِ وَٱلْأَرْضِ ۚ يَغْفِرُ لِمَن يَشَآءُ وَيُعَذِّبُ مَن يَشَآءُ ۚ وَكَانَ ٱللَّهُ غَفُورًا رَّحِيمًا ١٤

---

15. ನೀವು ಯುದ್ಧಾರ್ಜಿತ ಸೊತ್ತನ್ನು ವಶಪಡಿಸಲು ಹೋಗುವಾಗ ಹಿಂದೆ ಉಳಿದವರು ಹೇಳುತ್ತಾರೆ: “ನಾವು ಕೂಡ ನಿಮ್ಮೊಡನೆ ಬರಲು ಅನುಮತಿ ನೀಡಿರಿ.” ಅವರು ಅಲ್ಲಾಹನ ವಚನಗಳನ್ನು ಬದಲಾಯಿಸಲು ಬಯಸುತ್ತಾರೆ. ಹೇಳಿರಿ: “ನೀವು ಎಂದಿಗೂ ನಮ್ಮ ಜೊತೆಗೆ ಬರುವುದಿಲ್ಲ ಎಂದು ಅಲ್ಲಾಹು ಮೊದಲೇ ಹೇಳಿಬಿಟ್ಟಿದ್ದಾನೆ.” ಆಗ ಅವರು ಹೇಳುತ್ತಾರೆ: “ವಾಸ್ತವವಾಗಿ, ನಿಮಗೆ ನಮ್ಮ ಮೇಲೆ ಅಸೂಯೆಯಿದೆ.” ಅಲ್ಲ, ವಾಸ್ತವವಾಗಿ ಅವರು ಸ್ವಲ್ಪವೇ ಅರ್ಥಮಾಡಿಕೊಳ್ಳುತ್ತಾರೆ.

سَيَقُولُ ٱلْمُخَلَّفُونَ إِذَا ٱنطَلَقْتُمْ إِلَىٰ مَغَانِمَ لِتَأْخُذُوهَا ذَرُونَا نَتَّبِعْكُمْ ۖ يُرِيدُونَ أَن يُبَدِّلُوا۟ كَلَـٰمَ ٱللَّهِ ۚ قُل لَّن تَتَّبِعُونَا كَذَٰلِكُمْ قَالَ ٱللَّهُ مِن قَبْلُ ۖ فَسَيَقُولُونَ بَلْ تَحْسُدُونَنَا ۚ بَلْ كَانُوا۟ لَا يَفْقَهُونَ إِلَّا قَلِيلًا ١٥

---

16. ಮರುಭೂಮಿ ನಿವಾಸಿಗಳಲ್ಲಿ ಹಿಂದೆ ಉಳಿದವರೊಡನೆ ಹೇಳಿರಿ: “ಮಹಾ ಪರಾಕ್ರಮಿಗಳಾದ ಜನರ ವಿರುದ್ಧ ಯುದ್ಧ ಮಾಡಲು ನಿಮ್ಮನ್ನು ಸದ್ಯವೇ ಕರೆಯಲಾಗುವುದು. ನೀವು ಅವರೊಡನೆ ಯುದ್ಧ ಮಾಡಬೇಕು ಅಥವಾ ಅವರು ಮುಸಲ್ಮಾನರಾಗಬೇಕು! ನೀವು ಈ ಆಜ್ಞೆಯನ್ನು ಪಾಲಿಸಿದರೆ ಅಲ್ಲಾಹು ನಿಮಗೆ ಉತ್ತಮ ಪ್ರತಿಫಲವನ್ನು ನೀಡುವನು. ಇದಕ್ಕೆ ಮೊದಲು ನೀವು ಮುಖ ತಿರುಗಿಸಿ ನಡೆದಂತೆ ಈಗಲೂ ನೀವು ಮುಖ ತಿರುಗಿಸಿ ನಡೆದರೆ ಅವನು ನಿಮಗೆ ಯಾತನಾಮಯ ಶಿಕ್ಷೆಯನ್ನು ನೀಡುವನು.”

قُل لِّلْمُخَلَّفِينَ مِنَ ٱلْأَعْرَابِ سَتُدْعَوْنَ إِلَىٰ قَوْمٍ أُو۟لِى بَأْسٍ شَدِيدٍ تُقَـٰتِلُونَهُمْ أَوْ يُسْلِمُونَ ۖ فَإِن تُطِيعُوا۟ يُؤْتِكُمُ ٱللَّهُ أَجْرًا حَسَنًا ۖ وَإِن تَتَوَلَّوْا۟ كَمَا تَوَلَّيْتُم مِّن قَبْلُ يُعَذِّبْكُمْ عَذَابًا أَلِيمًا ١٦

---

17. ಕುರುಡನ ಮೇಲೆ ದೋಷವಿಲ್ಲ. ಕುಂಟನ ಮೇಲೆ ದೋಷವಿಲ್ಲ. ರೋಗಿಯ ಮೇಲೂ ದೋಷವಿಲ್ಲ. ಯಾರು ಅಲ್ಲಾಹು ಮತ್ತು ಅವನ ಸಂದೇಶವಾಹಕರನ್ನು ಅನುಸರಿಸುತ್ತಾನೋ ಅವನನ್ನು ಅಲ್ಲಾಹು ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳಿಗೆ ಪ್ರವೇಶ ಮಾಡಿಸುವನು. ಯಾರು ಮುಖ ತಿರುಗಿಸಿ ನಡೆಯುತ್ತಾನೋ ಅವನಿಗೆ ಅಲ್ಲಾಹು ಯಾತನಾಮಯ ಶಿಕ್ಷೆಯನ್ನು ನೀಡುತ್ತಾನೆ.

لَّيْسَ عَلَى ٱلْأَعْمَىٰ حَرَجٌ وَلَا عَلَى ٱلْأَعْرَجِ حَرَجٌ وَلَا عَلَى ٱلْمَرِيضِ حَرَجٌ ۗ وَمَن يُطِعِ ٱللَّهَ وَرَسُولَهُۥ يُدْخِلْهُ جَنَّـٰتٍ تَجْرِى مِن تَحْتِهَا ٱلْأَنْهَـٰرُ ۖ وَمَن يَتَوَلَّ يُعَذِّبْهُ عَذَابًا أَلِيمًا ١٧

18. ಆ ಮರದ ಕೆಳಗೆ ನಿಮ್ಮ ಮುಂದೆ ಪ್ರತಿಜ್ಞೆ ಮಾಡುತ್ತಿದ್ದ ಆ ಸತ್ಯವಿಶ್ವಾಸಿಗಳ ಬಗ್ಗೆ ಅಲ್ಲಾಹು ಸಂಪ್ರೀತನಾಗಿದ್ದಾನೆ. ಅವರ ಹೃದಯಗಳಲ್ಲಿರುವುದು ಏನೆಂದು ಅವನಿಗೆ ತಿಳಿದಿದೆ. ಅವನು ಅವರಿಗೆ ಮನಃಶಾಂತಿಯನ್ನು ಇಳಿಸಿಕೊಟ್ಟನು ಮತ್ತು ಹತ್ತಿರದಲ್ಲೇ ಇರುವ ವಿಜಯವನ್ನು ಅವರಿಗೆ ಪ್ರತಿಫಲವಾಗಿ ನೀಡಿದನು.

لَّقَدۡ رَضِيَ ٱللَّهُ عَنِ ٱلۡمُؤۡمِنِينَ إِذۡ يُبَايِعُونَكَ تَحۡتَ ٱلشَّجَرَةِ فَعَلِمَ مَا فِي قُلُوبِهِمۡ فَأَنزَلَ ٱلسَّكِينَةَ عَلَيۡهِمۡ وَأَثَٰبَهُمۡ فَتۡحٗا قَرِيبٗا ﴿١٨﴾

19. ಅವರು ವಶಪಡಿಸುವಂತಹ ಹೇರಳ ಯುದ್ಧಾರ್ಜಿತ ಸೊತ್ತನ್ನು ಅವನು ಅವರಿಗೆ ನೀಡಿದನು. ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَمَغَانِمَ كَثِيرَةٗ يَأۡخُذُونَهَاۗ وَكَانَ ٱللَّهُ عَزِيزًا حَكِيمٗا ﴿١٩﴾

20. ನೀವು ವಶಪಡಿಸುವಂತಹ ಹೇರಳ ಯುದ್ಧಾರ್ಜಿತ ಸೊತ್ತನ್ನು ಅಲ್ಲಾಹು ನಿಮಗೆ ವಾಗ್ದಾನ ಮಾಡಿದ್ದಾನೆ. ಅವನು ನಿಮಗೆ ಇದನ್ನು (ಖೈಬರ್ ಯುದ್ಧದ ಸೊತ್ತನ್ನು) ಬೇಗನೇ ನೀಡಿದನು. ಜನರ ಕೈಗಳನ್ನು ನಿಮ್ಮಿಂದ ತಡೆದನು. ಅದು ಸತ್ಯವಿಶ್ವಾಸಿಗಳಿಗೆ ಒಂದು ದೃಷ್ಟಾಂತವಾಗುವುದಕ್ಕಾಗಿ ಮತ್ತು ಅವನು ನಿಮ್ಮನ್ನು ನೇರಮಾರ್ಗಕ್ಕೆ ಮುನ್ನಡೆಸುವುದಕ್ಕಾಗಿ.

وَعَدَكُمُ ٱللَّهُ مَغَانِمَ كَثِيرَةٗ تَأۡخُذُونَهَا فَعَجَّلَ لَكُمۡ هَٰذِهِۦ وَكَفَّ أَيۡدِيَ ٱلنَّاسِ عَنكُمۡ وَلِتَكُونَ ءَايَةٗ لِّلۡمُؤۡمِنِينَ وَيَهۡدِيَكُمۡ صِرَٰطٗا مُّسۡتَقِيمٗا ﴿٢٠﴾

21. ನೀವು ವಶಪಡಿಸದಂತಹ ಬೇರೆ (ಯುದ್ಧಾರ್ಜಿತ ಸೊತ್ತನ್ನು) ಕೂಡ ವಾಗ್ದಾನ ಮಾಡಿದ್ದಾನೆ. ಅಲ್ಲಾಹು ಅವುಗಳನ್ನು ಅವನ ನಿಯಂತ್ರಣದಲ್ಲಿಟ್ಟಿದ್ದಾನೆ. ಅಲ್ಲಾಹು ಎಲ್ಲ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

وَأُخۡرَىٰ لَمۡ تَقۡدِرُواْ عَلَيۡهَا قَدۡ أَحَاطَ ٱللَّهُ بِهَاۚ وَكَانَ ٱللَّهُ عَلَىٰ كُلِّ شَيۡءٖ قَدِيرٗا ﴿٢١﴾

22. ಆ ಸತ್ಯನಿಷೇಧಿಗಳು ನಿಮ್ಮೊಂದಿಗೆ ಯುದ್ಧ ಮಾಡಿದರೆ ಅವರು ಬೆನ್ನು ತೋರಿಸಿ ಓಡುತ್ತಾರೆ. ನಂತರ ಅವರು ಯಾವುದೇ ರಕ್ಷಕನನ್ನು ಅಥವಾ ಸಹಾಯಕನನ್ನು ಕಾಣುವುದಿಲ್ಲ.

وَلَوۡ قَٰتَلَكُمُ ٱلَّذِينَ كَفَرُواْ لَوَلَّوُاْ ٱلۡأَدۡبَٰرَ ثُمَّ لَا يَجِدُونَ وَلِيّٗا وَلَا نَصِيرٗا ﴿٢٢﴾

23. ಅದು ಮೊದಲಿನಿಂದಲೇ ನಡೆದು ಬಂದಿರುವ ಅಲ್ಲಾಹನ ನಿಯಮವಾಗಿದೆ. ಅಲ್ಲಾಹನ ನಿಯಮಕ್ಕೆ ಬದಲಾವಣೆ ತರುವವರನ್ನು ನೀವು ಕಾಣಲಾರಿರಿ.

سُنَّةَ ٱللَّهِ ٱلَّتِي قَدۡ خَلَتۡ مِن قَبۡلُۖ وَلَن تَجِدَ لِسُنَّةِ ٱللَّهِ تَبۡدِيلٗا ﴿٢٣﴾

24. ನಿಮಗೆ ಅವರ (ವೈರಿಗಳ) ವಿರುದ್ಧ ಗೆಲುವನ್ನು ನೀಡಿದ ಬಳಿಕ ಮಕ್ಕಾದಲ್ಲಿ ಅವರ ಕೈಗಳನ್ನು ನಿಮ್ಮಿಂದ ಮತ್ತು ನಿಮ್ಮ ಕೈಗಳನ್ನು ಅವರಿಂದ ತಡೆದದ್ದು ಅವನೇ. ಅಲ್ಲಾಹು ನೀವು ಮಾಡುತ್ತಿರುವ ಕರ್ಮಗಳನ್ನು ವೀಕ್ಷಿಸುತ್ತಿದ್ದಾನೆ.

وَهُوَ ٱلَّذِي كَفَّ أَيۡدِيَهُمۡ عَنكُمۡ وَأَيۡدِيَكُمۡ عَنۡهُم بِبَطۡنِ مَكَّةَ مِنۢ بَعۡدِ أَنۡ أَظۡفَرَكُمۡ عَلَيۡهِمۡۚ وَكَانَ ٱللَّهُ بِمَا تَعۡمَلُونَ بَصِيرًا ﴿٢٤﴾

25. ಅವರೇ ಸತ್ಯವನ್ನು ನಿಷೇಧಿಸಿದವರು, ಪವಿತ್ರ ಮಸೀದಿಯಿಂದ ನಿಮ್ಮನ್ನು ತಡೆದವರು ಮತ್ತು ಬಲಿಮೃಗಗಳು ಅವುಗಳನ್ನು ಬಲಿ ನೀಡುವ ಸ್ಥಳಕ್ಕೆ ತಲುಪದಂತೆ ತಡೆಹಿಡಿದವರು. ನೀವು

هُمُ ٱلَّذِينَ كَفَرُواْ وَصَدُّوكُمۡ عَنِ ٱلۡمَسۡجِدِ ٱلۡحَرَامِ وَٱلۡهَدۡيَ مَعۡكُوفًا أَن يَبۡلُغَ مَحِلَّهُۥۚ وَلَوۡلَا

ತಿಳಿದಿರದ (ಅನೇಕ) ಸತ್ಯವಿಶ್ವಾಸಿ ಪುರುಷರು ಮತ್ತು (ಅನೇಕ) ಸತ್ಯವಿಶ್ವಾಸಿ ಮಹಿಳೆಯರು (ಮಕ್ಕಾದಲ್ಲಿ) ಇರದಿದ್ದಲ್ಲಿ—ಅಂದರೆ ನೀವು ಅವರನ್ನು ತುಳಿದು (ಹತ್ಯೆ ಮಾಡಿ), ಅದರಿಂದ ನೀವು ತಿಳಿಯದೆ ನಿಮಗೆ ಅನಾಹುತ ಎರಗುವ ಸಾಧ್ಯತೆ ಇರದಿದ್ದಲ್ಲಿ (ನೀವು ಅವರ ವಿರುದ್ಧ ಯುದ್ಧ ಮಾಡಲು ಅಲ್ಲಾಹು ನಿಮಗೆ ಅನುಮತಿ ನೀಡುತ್ತಿದ್ದನು). ಇದು ಅಲ್ಲಾಹು ಅವನು ಇಚ್ಛಿಸು-ವವರನ್ನು ಅವನ ದಯೆಯಲ್ಲಿ ಸೇರಿಸುವುದಕ್ಕಾಗಿದೆ. ಅವರು (ಮಕ್ಕಾದಲ್ಲಿರುವ ಸತ್ಯವಿಶ್ವಾಸಿಗಳು ಮತ್ತು ಸತ್ಯನಿಷೇಧಿಗಳು) ಬೇರೆ ಬೇರೆಯಾಗಿ ವಾಸಿಸುತ್ತಿದ್ದರೆ ಅವರಲ್ಲಿರುವ ಸತ್ಯನಿಷೇಧಿಗಳಿಗೆ ನಾವು ಯಾತನಾಮಯ ಶಿಕ್ಷೆಯನ್ನು ನೀಡುತ್ತಿದ್ದೆವು.

رِجَالٌ مُّؤْمِنُونَ وَنِسَآءٌ مُّؤْمِنَٰتٌ لَّمْ تَعْلَمُوهُمْ
أَن تَطَـُٔوهُمْ فَتُصِيبَكُم مِّنْهُم مَّعَرَّةٌۢ بِغَيْرِ
عِلْمٍۖ لِّيُدْخِلَ ٱللَّهُ فِى رَحْمَتِهِۦ مَن يَشَآءُۚ لَوْ
تَزَيَّلُوا۟ لَعَذَّبْنَا ٱلَّذِينَ كَفَرُوا۟ مِنْهُمْ عَذَابًا
أَلِيمًا ﴿٢٥﴾

---

26. ಸತ್ಯನಿಷೇಧಿಗಳು ತಮ್ಮ ಹೃದಯಗಳಲ್ಲಿ ದುರಭಿಮಾನವನ್ನು—ಅಜ್ಞಾನಕಾಲದ ದುರಭಿಮಾನವನ್ನು—ಇಟ್ಟುಕೊಂಡಿದ್ದ ಸಂದರ್ಭ! ಅಲ್ಲಾಹು ಅವನ ಸಂದೇಶವಾಹಕರ ಮೇಲೆ ಮತ್ತು ಸತ್ಯವಿಶ್ವಾಸಿಗಳ ಮೇಲೆ ಅವನ ಕಡೆಯ ಮನಃಶಾಂತಿಯನ್ನು ಇಳಿಸಿಕೊಟ್ಟನು. ಅಲ್ಲಾಹು ಅವರನ್ನು ದೇವಭಯದಲ್ಲಿ ದೃಢವಾಗಿ ನಿಲ್ಲಿಸಿದನು. ಅವರು ಅದಕ್ಕೆ ಅರ್ಹರು ಮತ್ತು ಅದರ ಹಕ್ಕುಳ್ಳವ-ರಾಗಿದ್ದರು. ಅಲ್ಲಾಹು ಎಲ್ಲ ವಿಷಯಗಳ ಬಗ್ಗೆ ತಿಳಿದವನಾಗಿದ್ದಾನೆ.

إِذْ جَعَلَ ٱلَّذِينَ كَفَرُوا۟ فِى قُلُوبِهِمُ ٱلْحَمِيَّةَ
حَمِيَّةَ ٱلْجَٰهِلِيَّةِ فَأَنزَلَ ٱللَّهُ سَكِينَتَهُۥ عَلَىٰ
رَسُولِهِۦ وَعَلَى ٱلْمُؤْمِنِينَ وَأَلْزَمَهُمْ كَلِمَةَ ٱلتَّقْوَىٰ
وَكَانُوٓا۟ أَحَقَّ بِهَا وَأَهْلَهَاۚ وَكَانَ ٱللَّهُ بِكُلِّ شَىْءٍ
عَلِيمًا ﴿٢٦﴾

---

27. ಅಲ್ಲಾಹು ತನ್ನ ಸಂದೇಶವಾಹಕರಿಗೆ ತೋರಿಸಿದ ಕನಸನ್ನು ಸಾಕಾರಗೊಳಿಸಿದನು. ಅಂದರೆ ಅಲ್ಲಾಹು ಇಚ್ಛಿಸಿದರೆ ನೀವು ನಿರ್ಭಯರಾಗಿ, ತಲೆಗೂದಲು ಬೋಳಿಸಿ ಮತ್ತು ಕಿರಿದಾಗಿಸಿದ ಸ್ಥಿತಿಯಲ್ಲಿ ಯಾರನ್ನೂ ಭಯಪಡದೆ ಪವಿತ್ರ ಮಸೀದಿಯನ್ನು ಪ್ರವೇಶಿಸುವಿರಿ (ಎಂಬ ಕನಸು). ನೀವು ತಿಳಿಯದೇ ಇರುವ ವಿಷಯಗಳನ್ನು ಅವನು ತಿಳಿದಿದ್ದಾನೆ. ಆದ್ದರಿಂದ ಅವನು ಅದಕ್ಕೆ ಮೊದಲು ಹತ್ತಿರದಲ್ಲೇ ಇರುವ ಒಂದು ವಿಜಯವನ್ನು ನಿಮಗೆ ಸುಗಮಗೊಳಿಸಿದನು.[1]

لَّقَدْ صَدَقَ ٱللَّهُ رَسُولَهُ ٱلرُّءْيَا بِٱلْحَقِّۖ لَتَدْخُلُنَّ
ٱلْمَسْجِدَ ٱلْحَرَامَ إِن شَآءَ ٱللَّهُ ءَامِنِينَ مُحَلِّقِينَ
رُءُوسَكُمْ وَمُقَصِّرِينَ لَا تَخَافُونَۖ فَعَلِمَ مَا لَمْ
تَعْلَمُوا۟ فَجَعَلَ مِن دُونِ ذَٰلِكَ فَتْحًا قَرِيبًا ﴿٢٧﴾

---

28. ಅವನೇ ಸನ್ಮಾರ್ಗ ಮತ್ತು ಸತ್ಯಧರ್ಮದೊಂದಿಗೆ ತನ್ನ ಸಂದೇಶ-ವಾಹಕರನ್ನು ಕಳುಹಿಸಿದವನು. ಅದನ್ನು ಎಲ್ಲ ಧರ್ಮಗಳ ಮೇಲೆ ವಿಜಯಿಯಾಗಿಸುವುದಕ್ಕಾಗಿ. ಸಾಕ್ಷಿಯಾಗಿ ಅಲ್ಲಾಹು ಸಾಕು.

هُوَ ٱلَّذِىٓ أَرْسَلَ رَسُولَهُۥ بِٱلْهُدَىٰ وَدِينِ
ٱلْحَقِّ لِيُظْهِرَهُۥ عَلَى ٱلدِّينِ كُلِّهِۦۚ وَكَفَىٰ
بِٱللَّهِ شَهِيدًا ﴿٢٨﴾

---

[1] ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಸಹಾಬಿಗಳೊಡನೆ ಶಾಂತಿಯಿಂದ ಉಮ್ರ ನಿರ್ವಹಿಸುವ ಕನಸನ್ನು ಕಂಡರು. ಆದ್ದರಿಂದ ಅವರು ಉಮ್ರ ನಿರ್ವಹಿಸುವುದಕ್ಕಾಗಿ ಮಕ್ಕಾಗೆ ಹೊರಟರು. ಆದರೆ ದಾರಿ ಮಧ್ಯೆ ಕುರೈಶರು ಅವರನ್ನು ಮಕ್ಕಾ ಪ್ರವೇಶಿಸದಂತೆ ತಡೆದರು. ಒಂದು ಯುದ್ಧದ ಹಂತಕ್ಕೆ ತಲುಪಿದ್ದ ಸಂಘರ್ಷವು ನಂತರ ಹುದೈಬಿಯಾ ಒಪ್ಪಂದದ ಮೂಲಕ ಕೊನೆಯಾಯಿತು. ಈ ಒಪ್ಪಂದದ ಪ್ರಕಾರ ಈ ವರ್ಷ ಮುಸ್ಲಿಮರು ಉಮ್ರ ನಿರ್ವಹಿಸಬಾರದು. ಆದರೆ ಮುಂದಿನ ವರ್ಷ ನಿರ್ವಹಿಸಬಹುದು. ಮುಂದಿನ ವರ್ಷ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಸಹಾಬಿಗಳೊಡನೆ ಶಾಂತಿಯಿಂದ ಉಮ್ರ ನಿರ್ವಹಿಸಿದರು.

29. ಮುಹಮ್ಮದ್ ಅಲ್ಲಾಹನ ಸಂದೇಶವಾಹಕರು. ಅವರ ಜೊತೆಗಿರುವವರು ಸತ್ಯನಿಷೇಧಿಗಳೊಡನೆ ಕಠೋರವಾಗಿ ವರ್ತಿಸುವವರು ಮತ್ತು ತಮ್ಮೊಳಗೆ ಅಪಾರ ದಯೆಯುಳ್ಳವರಾಗಿದ್ದಾರೆ. ಅವರು ಅಲ್ಲಾಹನ ಔದಾರ್ಯ ಮತ್ತು ಸಂಪ್ರೀತಿಯನ್ನು ಹುಡುಕುತ್ತಾ ತಲೆಬಾಗುವುದನ್ನು ಮತ್ತು ಸಾಷ್ಟಾಂಗ ಮಾಡುವುದನ್ನು ನೀವು ಕಾಣುವಿರಿ. ಸಾಷ್ಟಾಂಗ ಮಾಡಿದ ಕಾರಣದಿಂದಾಗಿ ಅವರ ಮುಖಗಳಲ್ಲಿ ಅವರ ಗುರುತು ಇದೆ. ಇದು ತೌರಾತಿನಲ್ಲಿರುವ ಅವರ ವಿವರಣೆಯಾಗಿದೆ. ಇಂಜೀಲಿನಲ್ಲಿರುವ ಅವರ ವಿವರಣೆಯು ಒಂದು ಸಸ್ಯದಂತೆ. ಅದರ ಮೊಳಕೆಯನ್ನು ಹೊರತಂದಿತು. ನಂತರ ಅದಕ್ಕೆ ಪುಷ್ಟಿಯನ್ನು ನೀಡಿತು. ನಂತರ ಅದು ಬಲವನ್ನು ಪಡೆದು ರೈತರಿಗೆ ಸಂತೋಷವನ್ನು ನೀಡುವ ರೀತಿಯಲ್ಲಿ ಅದರ ಕಾಂಡದ ಮೇಲೆ ನೆಟ್ಟಗೆ ನಿಂತಿತು. ಅವರ ಮೂಲಕ ಅಲ್ಲಾಹು ಸತ್ಯನಿಷೇಧಿಗಳನ್ನು ರೇಗಿಸುವುದಕ್ಕಾಗಿ. ಅವರಲ್ಲಿರುವ ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರಿಗೆ ಅಲ್ಲಾಹು ಕ್ಷಮೆ ಮತ್ತು ಮಹಾ ಪ್ರತಿಫಲವನ್ನು ವಾಗ್ದಾನ ಮಾಡಿದ್ದಾನೆ.

مُّحَمَّدٌ رَّسُولُ ٱللَّهِۚ وَٱلَّذِينَ مَعَهُۥٓ أَشِدَّآءُ عَلَى ٱلۡكُفَّارِ رُحَمَآءُ بَيۡنَهُمۡۖ تَرَىٰهُمۡ رُكَّعٗا سُجَّدٗا يَبۡتَغُونَ فَضۡلٗا مِّنَ ٱللَّهِ وَرِضۡوَٰنٗاۖ سِيمَاهُمۡ فِي وُجُوهِهِم مِّنۡ أَثَرِ ٱلسُّجُودِۚ ذَٰلِكَ مَثَلُهُمۡ فِي ٱلتَّوۡرَىٰةِۚ وَمَثَلُهُمۡ فِي ٱلۡإِنجِيلِ كَزَرۡعٍ أَخۡرَجَ شَطۡـَٔهُۥ فَـَٔازَرَهُۥ فَٱسۡتَغۡلَظَ فَٱسۡتَوَىٰ عَلَىٰ سُوقِهِۦ يُعۡجِبُ ٱلزُّرَّاعَ لِيَغِيظَ بِهِمُ ٱلۡكُفَّارَۗ وَعَدَ ٱللَّهُ ٱلَّذِينَ ءَامَنُواْ وَعَمِلُواْ ٱلصَّـٰلِحَٰتِ مِنۡهُم مَّغۡفِرَةٗ وَأَجۡرًا عَظِيمَۢا ﴿٢٩﴾

# 49. ಅಲ್-ಹುಜುರಾತ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಸತ್ಯವಿಶ್ವಾಸಿಗಳೇ! ಅಲ್ಲಾಹು ಮತ್ತು ಅವನ ಸಂದೇಶವಾಹಕರಿಗಿಂತ ಮುಂದೆ ಹೋಗಬೇಡಿ. ಅಲ್ಲಾಹನನ್ನು ಭಯಪಡಿರಿ. ನಿಶ್ಚಯವಾಗಿಯೂ ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ತಿಳಿದವನಾಗಿದ್ದಾನೆ.

يَـٰٓأَيُّهَا ٱلَّذِينَ ءَامَنُواْ لَا تُقَدِّمُواْ بَيۡنَ يَدَيِ ٱللَّهِ وَرَسُولِهِۦۖ وَٱتَّقُواْ ٱللَّهَۚ إِنَّ ٱللَّهَ سَمِيعٌ عَلِيمٞ ﴿١﴾

2. ಸತ್ಯವಿಶ್ವಾಸಿಗಳೇ! ನಿಮ್ಮ ಧ್ವನಿಗಳನ್ನು ಪ್ರವಾದಿಯ ಧ್ವನಿಗಿಂತ ಹೆಚ್ಚಿಸಬೇಡಿ. ನೀವು ಪರಸ್ಪರ ಉಚ್ಛಧ್ವನಿಯಲ್ಲಿ ಮಾತನಾಡುವಂತೆ ಅವರೊಡನೆ ಉಚ್ಛಧ್ವನಿಯಲ್ಲಿ ಮಾತನಾಡಬೇಡಿ. ನೀವು ತಿಳಿಯದೆಯೇ ನಿಮ್ಮ ಕರ್ಮಗಳು ನಿಷ್ಫಲವಾಗದಿರುವುದಕ್ಕಾಗಿ.

يَـٰٓأَيُّهَا ٱلَّذِينَ ءَامَنُواْ لَا تَرۡفَعُوٓاْ أَصۡوَٰتَكُمۡ فَوۡقَ صَوۡتِ ٱلنَّبِيِّ وَلَا تَجۡهَرُواْ لَهُۥ بِٱلۡقَوۡلِ كَجَهۡرِ بَعۡضِكُمۡ لِبَعۡضٍ أَن تَحۡبَطَ أَعۡمَٰلُكُمۡ وَأَنتُمۡ لَا تَشۡعُرُونَ ﴿٢﴾

3. ನಿಶ್ಚಯವಾಗಿಯೂ ಅಲ್ಲಾಹನ ಸಂದೇಶವಾಹಕರ ಬಳಿ ತಮ್ಮ ಧ್ವನಿಗಳನ್ನು ತಗ್ಗಿಸುವವರು ಯಾರೋ ಅವರ ಹೃದಯಗಳನ್ನು ಅಲ್ಲಾಹು ದೇವಭಯಕ್ಕಾಗಿ ಪರೀಕ್ಷಿಸಿದ್ದಾನೆ. ಅವರಿಗೆ ಕ್ಷಮೆ ಮತ್ತು ಮಹಾ ಪ್ರತಿಫಲವಿದೆ.

إِنَّ ٱلَّذِينَ يَغُضُّونَ أَصۡوَٰتَهُمۡ عِندَ رَسُولِ ٱللَّهِ أُوْلَـٰٓئِكَ ٱلَّذِينَ ٱمۡتَحَنَ ٱللَّهُ قُلُوبَهُمۡ لِلتَّقۡوَىٰۚ لَهُم مَّغۡفِرَةٞ وَأَجۡرٌ عَظِيمٌ ﴿٣﴾

4. ನಿಶ್ಚಯವಾಗಿಯೂ ಕೊಠಡಿಗಳ ಹಿಂಭಾಗದಿಂದ ನಿಮ್ಮನ್ನು ಕೂಗಿ ಕರೆಯುವವರು ಯಾರೋ ಅವರಲ್ಲಿ ಹೆಚ್ಚಿನವರು ಬುದ್ಧಿಯಿಲ್ಲದವರಾಗಿದ್ದಾರೆ.

إِنَّ ٱلَّذِينَ يُنَادُونَكَ مِن وَرَآءِ ٱلۡحُجُرَٰتِ أَكۡثَرُهُمۡ لَا يَعۡقِلُونَ ٤

5. ನೀವು ಅವರ ಬಳಿಗೆ ಹೊರಡುವ ತನಕ ಅವರು ತಾಳ್ಮೆಯಿಂದಿರುತ್ತಿದ್ದರೆ ಅದು ಅವರಿಗೆ ಶ್ರೇಷ್ಠವಾಗಿರುತ್ತಿತ್ತು. ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

وَلَوۡ أَنَّهُمۡ صَبَرُواْ حَتَّىٰ تَخۡرُجَ إِلَيۡهِمۡ لَكَانَ خَيۡرٗا لَّهُمۡۚ وَٱللَّهُ غَفُورٞ رَّحِيمٞ ٥

6. ಸತ್ಯವಿಶ್ವಾಸಿಗಳೇ! ಒಬ್ಬ ದುಷ್ಕರ್ಮಿ ಒಂದು ಮಾಹಿತಿಯೊಂದಿಗೆ ನಿಮ್ಮ ಬಳಿಗೆ ಬಂದರೆ ನೀವು ಅದರ ಬಗ್ಗೆ ಸರಿಯಾಗಿ ತನಿಖೆ ಮಾಡಿರಿ. ನೀವು ಅಜ್ಞಾನದಿಂದ ಯಾರಿಗಾದರೂ ತೊಂದರೆ ಮಾಡಿ ನಂತರ ಅದರ ಕಾರಣದಿಂದ ನೀವು ವಿಷಾದ ಪಡದಿರುವುದಕ್ಕಾಗಿ.

يَٰٓأَيُّهَا ٱلَّذِينَ ءَامَنُوٓاْ إِن جَآءَكُمۡ فَاسِقُۢ بِنَبَإٖ فَتَبَيَّنُوٓاْ أَن تُصِيبُواْ قَوۡمَۢا بِجَهَٰلَةٖ فَتُصۡبِحُواْ عَلَىٰ مَا فَعَلۡتُمۡ نَٰدِمِينَ ٦

7. ತಿಳಿಯಿರಿ! ನಿಮ್ಮೊಡನೆ ಅಲ್ಲಾಹನ ಸಂದೇಶವಾಹಕರಾಗಿದ್ದಾರೆ. ಹೆಚ್ಚಿನ ವಿಷಯಗಳಲ್ಲಿ ಅವರು ನಿಮ್ಮ ಮಾತನ್ನು ಕೇಳುತ್ತಿದ್ದರೆ ನೀವು ಕಷ್ಟಪಡುತ್ತಿದ್ದಿರಿ. ಆದರೆ ಅಲ್ಲಾಹು ನಿಮಗೆ ಸತ್ಯವಿಶ್ವಾಸವನ್ನು ಇಷ್ಟವಾಗುವಂತೆ ಮಾಡಿದನು ಮತ್ತು ನಿಮ್ಮ ಹೃದಯಗಳಲ್ಲಿ ಅದನ್ನು ಅಂದಗೊಳಿಸಿಕೊಟ್ಟನು. ನಿಮಗೆ ಸತ್ಯನಿಷೇಧ, ದುಷ್ಕರ್ಮ ಮತ್ತು ಆಜ್ಞೋಲ್ಲಂಘನೆಯನ್ನು ಅಸಹ್ಯವಾಗುವಂತೆ ಮಾಡಿದನು. ಅವರೇ ಸನ್ಮಾರ್ಗ ಪಡೆದವರು.

وَٱعۡلَمُوٓاْ أَنَّ فِيكُمۡ رَسُولَ ٱللَّهِۚ لَوۡ يُطِيعُكُمۡ فِي كَثِيرٖ مِّنَ ٱلۡأَمۡرِ لَعَنِتُّمۡ وَلَٰكِنَّ ٱللَّهَ حَبَّبَ إِلَيۡكُمُ ٱلۡإِيمَٰنَ وَزَيَّنَهُۥ فِي قُلُوبِكُمۡ وَكَرَّهَ إِلَيۡكُمُ ٱلۡكُفۡرَ وَٱلۡفُسُوقَ وَٱلۡعِصۡيَانَۚ أُوْلَٰٓئِكَ هُمُ ٱلرَّٰشِدُونَ ٧

8. ಅದು ಅಲ್ಲಾಹನ ಕಡೆಯ ಔದಾರ್ಯ ಮತ್ತು ಅನುಗ್ರಹವಾಗಿದೆ. ಅಲ್ಲಾಹು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ.

فَضۡلٗا مِّنَ ٱللَّهِ وَنِعۡمَةٗۚ وَٱللَّهُ عَلِيمٌ حَكِيمٞ ٨

9. ಸತ್ಯವಿಶ್ವಾಸಿಗಳ ಎರಡು ಗುಂಪುಗಳು ಪರಸ್ಪರ ಹೋರಾಟಕ್ಕಿಳಿದರೆ ಅವರ ನಡುವೆ ಸಂಧಾನ ಮಾಡಿರಿ. ನಂತರ ಆ ಎರಡು ಗುಂಪುಗಳಲ್ಲಿ ಒಂದು ಗುಂಪು ಇನ್ನೊಂದು ಗುಂಪಿನ ವಿರುದ್ಧ ಅತಿರೇಕವೆಸಗಿದರೆ ಅತಿರೇಕವೆಸಗಿದ ಗುಂಪಿನ ವಿರುದ್ಧ—ಅವರು ಅಲ್ಲಾಹನ ಆಜ್ಞೆಗೆ ಮರಳುವ ತನಕ ನೀವೆಲ್ಲರೂ ಹೋರಾಡಿರಿ. ಅವರು ಮರಳಿದರೆ ಆ ಎರಡು ಗುಂಪುಗಳ ನಡುವೆ ನ್ಯಾಯಯುತವಾಗಿ ಸಂಧಾನ ಮಾಡಿರಿ. ನ್ಯಾಯದಿಂದ ವರ್ತಿಸಿರಿ. ನಿಶ್ಚಯವಾಗಿಯೂ ಅಲ್ಲಾಹು ನ್ಯಾಯಯುತವಾಗಿ ವರ್ತಿಸುವವರನ್ನು ಪ್ರೀತಿಸುತ್ತಾನೆ.

وَإِن طَآئِفَتَانِ مِنَ ٱلۡمُؤۡمِنِينَ ٱقۡتَتَلُواْ فَأَصۡلِحُواْ بَيۡنَهُمَاۖ فَإِنۢ بَغَتۡ إِحۡدَىٰهُمَا عَلَى ٱلۡأُخۡرَىٰ فَقَٰتِلُواْ ٱلَّتِي تَبۡغِي حَتَّىٰ تَفِيٓءَ إِلَىٰٓ أَمۡرِ ٱللَّهِۚ فَإِن فَآءَتۡ فَأَصۡلِحُواْ بَيۡنَهُمَا بِٱلۡعَدۡلِ وَأَقۡسِطُوٓاْۖ إِنَّ ٱللَّهَ يُحِبُّ ٱلۡمُقۡسِطِينَ ٩

10. ಸತ್ಯವಿಶ್ವಾಸಿಗಳು ಸಹೋದರರು. ಆದ್ದರಿಂದ ನಿಮ್ಮ ಇಬ್ಬರು ಸಹೋದರರ ನಡುವೆ ಸಂಧಾನ ಮಾಡಿರಿ. ಅಲ್ಲಾಹನನ್ನು

إِنَّمَا ٱلۡمُؤۡمِنُونَ إِخۡوَةٞ فَأَصۡلِحُواْ بَيۡنَ أَخَوَيۡكُمۡۚ وَٱتَّقُواْ ٱللَّهَ لَعَلَّكُمۡ تُرۡحَمُونَ ١٠

ಭಯಪಡಿರಿ. ನಿಮ್ಮ ಮೇಲೆ ದಯೆ ತೋರಲಾಗುವುದಕ್ಕಾಗಿ.

11. ಸತ್ಯವಿಶ್ವಾಸಿಗಳೇ! ಪುರುಷರು ಇತರ ಪುರುಷರನ್ನು ತಮಾಷೆ ಮಾಡಬಾರದು. ಅವರು ಇವರಿಗಿಂತ ಶ್ರೇಷ್ಠರಾಗಿರಬಹುದು. ಮಹಿಳೆಯರು ಇತರ ಮಹಿಳೆಯರನ್ನು ತಮಾಷೆ ಮಾಡಬಾರದು. ಅವರು ಇವರಿಗಿಂತ ಶ್ರೇಷ್ಠರಾಗಿರಬಹುದು. ನೀವು ಒಬ್ಬರು ಇನ್ನೊಬ್ಬರ ಕೊರತೆಯನ್ನು ಹೇಳಬೇಡಿ. ಯಾರನ್ನೂ ಅಡ್ಡಹೆಸರಿನಿಂದ ಕರೆಯಬೇಡಿ. ಸತ್ಯವಿಶ್ವಾಸವನ್ನು ಸ್ವೀಕರಿಸಿದ ನಂತರ ದುಷ್ಕರ್ಮವು ಬಹಳ ಕೆಟ್ಟ ಹೆಸರಾಗಿದೆ! ಯಾರು ಪಶ್ಚಾತ್ತಾಪಪಡುವುದಿಲ್ಲವೋ ಅವರೇ ಅಕ್ರಮಿಗಳು.

يَٰٓأَيُّهَا ٱلَّذِينَ ءَامَنُواْ لَا يَسۡخَرۡ قَوۡمٞ مِّن قَوۡمٍ عَسَىٰٓ أَن يَكُونُواْ خَيۡرٗا مِّنۡهُمۡ وَلَا نِسَآءٞ مِّن نِّسَآءٍ عَسَىٰٓ أَن يَكُنَّ خَيۡرٗا مِّنۡهُنَّۖ وَلَا تَلۡمِزُوٓاْ أَنفُسَكُمۡ وَلَا تَنَابَزُواْ بِٱلۡأَلۡقَٰبِۖ بِئۡسَ ٱلِٱسۡمُ ٱلۡفُسُوقُ بَعۡدَ ٱلۡإِيمَٰنِۚ وَمَن لَّمۡ يَتُبۡ فَأُوْلَٰٓئِكَ هُمُ ٱلظَّٰلِمُونَ ١١

12. ಸತ್ಯವಿಶ್ವಾಸಿಗಳೇ! ಹೆಚ್ಚಿನ ಊಹೆಗಳಿಂದಲೂ ದೂರವಿರಿ. ನಿಶ್ಚಯವಾಗಿಯೂ ಕೆಲವು ಊಹೆಗಳು ಪಾಪವಾಗಿವೆ. ಇನ್ನೊಬ್ಬರ (ಖಾಸಗಿ) ವಿಚಾರಗಳನ್ನು ಕೆದಕಬೇಡಿ. ಇನ್ನೊಬ್ಬರ ಬಗ್ಗೆ ಪರದೂಷಣೆ ಮಾಡಬೇಡಿ. ಸತ್ತು ಮಲಗಿರುವ ತನ್ನ ಸಹೋದರನ ಮಾಂಸವನ್ನು ತಿನ್ನಲು ನಿಮ್ಮಲ್ಲಿ ಯಾರಾದರೂ ಇಷ್ಟಪಡುತ್ತಾರೆಯೇ? ನೀವು ಅದನ್ನು ಅಸಹ್ಯಪಡುತ್ತೀರಿ! ಅಲ್ಲಾಹನನ್ನು ಭಯಪಡಿರಿ. ನಿಶ್ಚಯವಾಗಿಯೂ ಅಲ್ಲಾಹು ಪಶ್ಚಾತ್ತಾಪವನ್ನು ಸ್ವೀಕರಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

يَٰٓأَيُّهَا ٱلَّذِينَ ءَامَنُواْ ٱجۡتَنِبُواْ كَثِيرٗا مِّنَ ٱلظَّنِّ إِنَّ بَعۡضَ ٱلظَّنِّ إِثۡمٞۖ وَلَا تَجَسَّسُواْ وَلَا يَغۡتَب بَّعۡضُكُم بَعۡضًاۚ أَيُحِبُّ أَحَدُكُمۡ أَن يَأۡكُلَ لَحۡمَ أَخِيهِ مَيۡتٗا فَكَرِهۡتُمُوهُۚ وَٱتَّقُواْ ٱللَّهَۚ إِنَّ ٱللَّهَ تَوَّابٞ رَّحِيمٞ ١٢

13. ಜನರೇ! ನಿಶ್ಚಯವಾಗಿಯೂ ನಾವು ನಿಮ್ಮನ್ನು ಒಂದು ಗಂಡು ಮತ್ತು ಒಂದು ಹೆಣ್ಣಿನಿಂದ ಸೃಷ್ಟಿಸಿದ್ದೇವೆ. ನೀವು ಪರಸ್ಪರ ಗುರುತಿಸುವುದಕ್ಕಾಗಿ ನಾವು ನಿಮ್ಮನ್ನು ವಿಭಿನ್ನ ಜನಾಂಗ ಮತ್ತು ಗೋತ್ರಗಳನ್ನಾಗಿ ಮಾಡಿದೆವು. ನಿಶ್ಚಯವಾಗಿಯೂ ನಿಮ್ಮಲ್ಲಿ ಅತ್ಯಧಿಕ ದೇವಭಯವುಳ್ಳವನು ಯಾರೋ ಅವನೇ ಅಲ್ಲಾಹನ ದೃಷ್ಟಿಯಲ್ಲಿ ಅತ್ಯಂತ ಗೌರವಾನ್ವಿತನು. ನಿಶ್ಚಯವಾಗಿಯೂ ಅಲ್ಲಾಹು ಸರ್ವಜ್ಞನು ಮತ್ತು ಸೂಕ್ಷ್ಮ ಜ್ಞಾನಿಯಾಗಿದ್ದಾನೆ.

يَٰٓأَيُّهَا ٱلنَّاسُ إِنَّا خَلَقۡنَٰكُم مِّن ذَكَرٖ وَأُنثَىٰ وَجَعَلۡنَٰكُمۡ شُعُوبٗا وَقَبَآئِلَ لِتَعَارَفُوٓاْۚ إِنَّ أَكۡرَمَكُمۡ عِندَ ٱللَّهِ أَتۡقَىٰكُمۡۚ إِنَّ ٱللَّهَ عَلِيمٌ خَبِيرٞ ١٣

14. ಮರುಭೂಮಿ ನಿವಾಸಿಗಳು ಹೇಳಿದರು: "ನಾವು ಸತ್ಯವಿಶ್ವಾಸಿಗಳಾಗಿದ್ದೇವೆ." ಹೇಳಿರಿ: "ನೀವು ಸತ್ಯವಿಶ್ವಾಸಿಗಳಾಗಿಲ್ಲ, ಬದಲಿಗೆ, ನಾವು ಮುಸ್ಲಿಮರಾಗಿದ್ದೇವೆ ಎಂದು ಹೇಳಿರಿ. ಏಕೆಂದರೆ ಸತ್ಯವಿಶ್ವಾಸವು ನಿಮ್ಮ ಹೃದಯವನ್ನು ಹೊಕ್ಕಿಲ್ಲ. ನೀವು ಅಲ್ಲಾಹನನ್ನು ಮತ್ತು ಅವನ ಸಂದೇಶವಾಹಕರನ್ನು ಅನುಸರಿಸಿದರೆ ಅವನು ನಿಮಗೆ ನಿಮ್ಮ ಕರ್ಮಫಲದಲ್ಲಿ ಏನೂ ಕಡಿಮೆ ಮಾಡುವುದಿಲ್ಲ. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ."

۞قَالَتِ ٱلۡأَعۡرَابُ ءَامَنَّاۖ قُل لَّمۡ تُؤۡمِنُواْ وَلَٰكِن قُولُوٓاْ أَسۡلَمۡنَا وَلَمَّا يَدۡخُلِ ٱلۡإِيمَٰنُ فِي قُلُوبِكُمۡۖ وَإِن تُطِيعُواْ ٱللَّهَ وَرَسُولَهُۥ لَا يَلِتۡكُم مِّنۡ أَعۡمَٰلِكُمۡ شَيۡـًٔاۚ إِنَّ ٱللَّهَ غَفُورٞ رَّحِيمٌ ١٤

15. ಅಲ್ಲಾಹು ಮತ್ತು ಅವನ ಸಂದೇಶವಾಹಕರಲ್ಲಿ ವಿಶ್ವಾಸವಿಟ್ಟ ಬಳಿಕ ಸ್ವಲ್ಪವೂ ಸಂಶಯಪಡದವರು ಮತ್ತು ತಮ್ಮ ತನು-ಧನಗಳಿಂದ ಅಲ್ಲಾಹನ ಮಾರ್ಗದಲ್ಲಿ ಹೋರಾಡುವವರು ಯಾರೋ ಅವರೇ ಸತ್ಯವಿಶ್ವಾಸಿಗಳು. ಅವರೇ ಸತ್ಯವಂತರು.

إِنَّمَا ٱلۡمُؤۡمِنُونَ ٱلَّذِينَ ءَامَنُواْ بِٱللَّهِ وَرَسُولِهِۦ ثُمَّ لَمۡ يَرۡتَابُواْ وَجَٰهَدُواْ بِأَمۡوَٰلِهِمۡ وَأَنفُسِهِمۡ فِي سَبِيلِ ٱللَّهِۚ أُوْلَٰٓئِكَ هُمُ ٱلصَّٰدِقُونَ ١٥

16. ಹೇಳಿರಿ: “ನೀವು ನಿಮ್ಮ ಧಾರ್ಮಿಕತೆಯ ಬಗ್ಗೆ ಅಲ್ಲಾಹನಿಗೆ ತಿಳಿಸುತ್ತಿದ್ದೀರಾ? ವಾಸ್ತವವಾಗಿ, ಭೂಮ್ಯಾಕಾಶಗಳಲ್ಲಿರುವ ಎಲ್ಲವನ್ನೂ ಅಲ್ಲಾಹು ತಿಳಿಯುತ್ತಾನೆ. ಅಲ್ಲಾಹು ಎಲ್ಲ ವಿಷಯಗಳನ್ನು ತಿಳಿದವನಾಗಿದ್ದಾನೆ.”

قُلۡ أَتُعَلِّمُونَ ٱللَّهَ بِدِينِكُمۡ وَٱللَّهُ يَعۡلَمُ مَا فِي ٱلسَّمَٰوَٰتِ وَمَا فِي ٱلۡأَرۡضِۚ وَٱللَّهُ بِكُلِّ شَيۡءٍ عَلِيمٞ ١٦

17. ಅವರು ಇಸ್ಲಾಂ ಸ್ವೀಕರಿಸಿದ್ದು ನಿಮಗೆ ಮಾಡಿದ ಉಪಕಾರವೆಂದು ಅವರು ಪರಿಗಣಿಸುತ್ತಾರೆ. ಹೇಳಿರಿ: “ನೀವು ಇಸ್ಲಾಂ ಸ್ವೀಕರಿಸಿದ್ದು ನನಗೆ ಮಾಡಿದ ಉಪಕಾರವೆಂದು ಪರಿಗಣಿಸಬೇಡಿ. ವಾಸ್ತವವಾಗಿ, ನಿಮಗೆ ಸತ್ಯವಿಶ್ವಾಸಕ್ಕೆ ದಾರಿ ತೋರಿಸಿದ್ದು ಅಲ್ಲಾಹು ನಿಮಗೆ ಮಾಡಿದ ಉಪಕಾರವಾಗಿದೆ. ನೀವು ಸತ್ಯವಂತರಾಗಿದ್ದರೆ.”

يَمُنُّونَ عَلَيۡكَ أَنۡ أَسۡلَمُواْۖ قُل لَّا تَمُنُّواْ عَلَيَّ إِسۡلَٰمَكُمۖ بَلِ ٱللَّهُ يَمُنُّ عَلَيۡكُمۡ أَنۡ هَدَىٰكُمۡ لِلۡإِيمَٰنِ إِن كُنتُمۡ صَٰدِقِينَ ١٧

18. ನಿಶ್ಚಯವಾಗಿಯೂ ಅಲ್ಲಾಹು ಭೂಮ್ಯಾಕಾಶಗಳ ಅದೃಶ್ಯಗಳನ್ನು ತಿಳಿಯುತ್ತಾನೆ. ಅಲ್ಲಾಹು ನೀವು ಮಾಡುತ್ತಿರುವ ಕರ್ಮಗಳನ್ನು ವೀಕ್ಷಿಸುತ್ತಿದ್ದಾನೆ.

إِنَّ ٱللَّهَ يَعۡلَمُ غَيۡبَ ٱلسَّمَٰوَٰتِ وَٱلۡأَرۡضِۚ وَٱللَّهُ بَصِيرُۢ بِمَا تَعۡمَلُونَ ١٨

# 50. ಕ್ವಾಫ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಕ್ವಾಫ್. ಈ ಮಹತ್ವಪೂರ್ಣ ಕುರ್‌ಆನಿನ ಮೇಲಾಣೆ.

قٓۚ وَٱلۡقُرۡءَانِ ٱلۡمَجِيدِ ١

2. ಅವರಿಂದಲೇ ಅವರಿಗೆ ಒಬ್ಬ ಮುನ್ನೆಚ್ಚರಿಕೆಗಾರ (ಪ್ರವಾದಿ) ಬಂದಿರುವುದನ್ನು ಕಂಡು ಅವರು ಆಶ್ಚರ್ಯಪಡುತ್ತಾರೆ. ಸತ್ಯನಿಷೇಧಿಗಳು ಹೇಳುತ್ತಾರೆ: “ಇದೊಂದು ಆಶ್ಚರ್ಯಕರ ಸಂಗತಿಯಾಗಿದೆ.

بَلۡ عَجِبُوٓاْ أَن جَآءَهُم مُّنذِرٞ مِّنۡهُمۡ فَقَالَ ٱلۡكَٰفِرُونَ هَٰذَا شَيۡءٌ عَجِيبٌ ٢

3. ನಾವು ಸತ್ತು ಮಣ್ಣಾಗಿ ಬಿಟ್ಟ ಬಳಿಕ (ಪುನಃ ಜೀವ ಪಡೆಯುವೆವೇ)? ಈ ಮರಳುವಿಕೆ ಬಹಳ ದೂರದ (ಅಸಂಭವ್ಯ) ಸಂಗತಿಯಾಗಿದೆ.”

أَءِذَا مِتۡنَا وَكُنَّا تُرَابٗاۖ ذَٰلِكَ رَجۡعُۢ بَعِيدٞ ٣

4. ನಿಶ್ಚಯವಾಗಿಯೂ ಭೂಮಿಯು ಅವರಿಂದ ಏನನ್ನು ಕಡಿಮೆ ಮಾಡುತ್ತಿದೆಯೆಂದು ನಮಗೆ ತಿಳಿದಿದೆ. ನಮ್ಮ ಬಳಿ ಎಲ್ಲವನ್ನೂ

قَدۡ عَلِمۡنَا مَا تَنقُصُ ٱلۡأَرۡضُ مِنۡهُمۡۖ وَعِندَنَا كِتَٰبٌ حَفِيظُۢ ٤

ನೆನಪಿಡುವ ಒಂದು ಗ್ರಂಥವಿದೆ.[1]

5. ವಾಸ್ತವವಾಗಿ, ಸತ್ಯವು ಅವರ ಬಳಿಗೆ ಬಂದಾಗ ಅವರು ಅದನ್ನು ನಿಷೇಧಿಸಿದರು. ಆದ್ದರಿಂದ ಅವರು ಗೊಂದಲಪೂರ್ಣ (ಅನಿಶ್ಚಿತ) ಸ್ಥಿತಿಯಲ್ಲಿದ್ದಾರೆ.

بَلۡ كَذَّبُواْ بِٱلۡحَقِّ لَمَّا جَآءَهُمۡ فَهُمۡ فِيٓ أَمۡرٖ مَّرِيجٍ ٥

6. ಅವರ ಮೇಲ್ಭಾಗದಲ್ಲಿರುವ ಆಕಾಶವನ್ನು ಅವರು ನೋಡುವುದಿಲ್ಲವೇ? ನಾವು ಅದನ್ನು ಹೇಗೆ ನಿರ್ಮಿಸಿದೆವು ಮತ್ತು ಅಲಂಕರಿಸಿದೆವು ಎಂದು? ಅದರಲ್ಲಿ ಯಾವುದೇ ಬಿರುಕುಗಳಿಲ್ಲ.

أَفَلَمۡ يَنظُرُوٓاْ إِلَى ٱلسَّمَآءِ فَوۡقَهُمۡ كَيۡفَ بَنَيۡنَٰهَا وَزَيَّنَّٰهَا وَمَا لَهَا مِن فُرُوجٖ ٦

7. ನಾವು ಭೂಮಿಯನ್ನು ಹರಡಿಸಿದೆವು ಮತ್ತು ಅದರಲ್ಲಿ ಪರ್ವತಗಳನ್ನು ಸ್ಥಾಪಿಸಿದೆವು. ನಾವು ಅದರಲ್ಲಿ ಎಲ್ಲಾ ವಿಧಗಳ ಸುಂದರ ವಸ್ತುಗಳನ್ನು ಬೆಳೆಸಿದೆವು.

وَٱلۡأَرۡضَ مَدَدۡنَٰهَا وَأَلۡقَيۡنَا فِيهَا رَوَٰسِيَ وَأَنۢبَتۡنَا فِيهَا مِن كُلِّ زَوۡجِۭ بَهِيجٖ ٧

8. (ಅಲ್ಲಾಹನ ಕಡೆಗೆ ಮರಳುವ) ಪ್ರತಿಯೊಬ್ಬ ದಾಸನಿಗೂ ಅಂತರ್ದೃಷ್ಟಿ ಮತ್ತು ಉಪದೇಶದ ರೂಪದಲ್ಲಿ.

تَبۡصِرَةٗ وَذِكۡرَىٰ لِكُلِّ عَبۡدٖ مُّنِيبٖ ٨

9. ನಾವು ಆಕಾಶದಿಂದ ಸಮೃದ್ಧವಾದ ಮಳೆಯನ್ನು ಸುರಿಸಿದೆವು. ಅದರ ಮೂಲಕ ತೋಟಗಳನ್ನು ಮತ್ತು ಕಟಾವು ಮಾಡುವ ಧಾನ್ಯಗಳನ್ನು ಬೆಳೆಸಿದೆವು.

وَنَزَّلۡنَا مِنَ ٱلسَّمَآءِ مَآءٗ مُّبَٰرَكٗا فَأَنۢبَتۡنَا بِهِۦ جَنَّٰتٖ وَحَبَّ ٱلۡحَصِيدِ ٩

10. ಮತ್ತು ಪದರ ಪದರ ಗೊನೆಗಳಿರುವ ಎತ್ತರವಾದ ಖರ್ಜೂರದ ಮರಗಳನ್ನು (ಬೆಳೆಸಿದೆವು)

وَٱلنَّخۡلَ بَاسِقَٰتٖ لَّهَا طَلۡعٞ نَّضِيدٞ ١٠

11. ದಾಸರ ಉಪಜೀವನಕ್ಕಾಗಿ. ನಾವು ಅದರಿಂದ (ಆ ನೀರಿನಿಂದ) ನಿರ್ಜೀವವಾಗಿದ್ದ ಪ್ರದೇಶಕ್ಕೆ ಜೀವವನ್ನು ನೀಡಿದೆವು. ಇದೇ ರೀತಿ (ಸಮಾಧಿಗಳಿಂದ ನಿಮ್ಮನ್ನು) ಹೊರತೆಗೆಯಲಾಗುವುದು.

رِّزۡقٗا لِّلۡعِبَادِۖ وَأَحۡيَيۡنَا بِهِۦ بَلۡدَةٗ مَّيۡتٗاۚ كَذَٰلِكَ ٱلۡخُرُوجُ ١١

12. ಇವರಿಗಿಂತ ಮೊದಲು ನೂಹರ ಜನತೆ, ರಸ್ಸ್‌ನ ಜನರು ಮತ್ತು ಸಮೂದ್ ಗೋತ್ರದವರು ಸತ್ಯವನ್ನು ನಿಷೇಧಿಸಿದರು.

كَذَّبَتۡ قَبۡلَهُمۡ قَوۡمُ نُوحٖ وَأَصۡحَٰبُ ٱلرَّسِّ وَثَمُودُ ١٢

13. ಆದ್ ಗೋತ್ರದವರು, ಫರೋಹ ಮತ್ತು ಲೂತರ ಸಹೋದರರು (ಜನರು) ಕೂಡ.

وَعَادٞ وَفِرۡعَوۡنُ وَإِخۡوَٰنُ لُوطٖ ١٣

14. ಐಕತ್‌ನ ಜನರು ಮತ್ತು ತುಬ್ಬಅ್‌ನ ಜನರು ಕೂಡ. ಅವರೆಲ್ಲರೂ ಸಂದೇಶವಾಹಕರುಗಳನ್ನು ನಿಷೇಧಿಸಿದರು. ಆದ್ದರಿಂದ ಅವರ ಮೇಲೆ ನನ್ನ ವಾಗ್ದಾನವು ಖಾತ್ರಿಯಾಗಿ ಬಿಟ್ಟಿತು.

وَأَصۡحَٰبُ ٱلۡأَيۡكَةِ وَقَوۡمُ تُبَّعٖۚ كُلّٞ كَذَّبَ ٱلرُّسُلَ فَحَقَّ وَعِيدِ ١٤

[1] ಮನುಷ್ಯನು ಸಮಾಧಿಗೆ ಸೇರಿದ ಬಳಿಕ ಅವನ ಮಾಂಸ ಮತ್ತು ಮೂಳೆಗಳನ್ನು ಭೂಮಿ ತಿನ್ನುತ್ತದೆ. ಅಂದರೆ ಅವನು ಭೂಮಿಯಲ್ಲಿ ಜೀರ್ಣವಾಗಿ ಬಿಡುತ್ತಾನೆ. ಅವನ ಮಾಂಸ, ಮೂಳೆಗಳು ಸೇರಿದಂತೆ ದೇಹದ ವಿವಿಧ ಭಾಗಗಳನ್ನು ಭೂಮಿ ತಿನ್ನುವುದನ್ನು ಅಲ್ಲಾಹು ತಿಳಿಯುತ್ತಾನೆ. ಅವೆಲ್ಲವೂ ಒಂದು ಗ್ರಂಥದಲ್ಲಿ ದಾಖಲಾಗಿರುತ್ತದೆ. ಆದ್ದರಿಂದ ಅವನನ್ನು ಪುನಃ ಸೃಷ್ಟಿಸುವುದು ಅಲ್ಲಾಹನಿಗೆ ಕಷ್ಟವೇ ಅಲ್ಲ.

15. ನಾವು ಪ್ರಥಮ ಬಾರಿ ಸೃಷ್ಟಿಸಿದಾಗಲೇ ಸುಸ್ತಾದೆವೇ? ಅಲ್ಲ, ವಾಸ್ತವವಾಗಿ ಅವರು ಹೊಸ ಸೃಷ್ಟಿಯ ಬಗ್ಗೆ ಸಂಶಯಪಡುತ್ತಾರೆ.

أَفَعَيِينَا بِٱلۡخَلۡقِ ٱلۡأَوَّلِۚ بَلۡ هُمۡ فِي لَبۡسٖ مِّنۡ خَلۡقٖ جَدِيدٖ ١٥

16. ನಿಶ್ಚಯವಾಗಿಯೂ ನಾವು ಮನುಷ್ಯನನ್ನು ಸೃಷ್ಟಿಸಿದೆವು. ಅವನ ಮನಸ್ಸು ಅವನೊಡನೆ ಪಿಸುಗುಡುವ ಸಂಗತಿಗಳನ್ನು ನಾವು ತಿಳಿಯುತ್ತೇವೆ. ನಾವು ಅವನಿಗೆ ಅವನ ಕಂಠನಾಡಿಗಿಂತಲೂ ಹತ್ತಿರದಲ್ಲಿದ್ದೇವೆ.

وَلَقَدۡ خَلَقۡنَا ٱلۡإِنسَٰنَ وَنَعۡلَمُ مَا تُوَسۡوِسُ بِهِۦ نَفۡسُهُۥۖ وَنَحۡنُ أَقۡرَبُ إِلَيۡهِ مِنۡ حَبۡلِ ٱلۡوَرِيدِ ١٦

17. ಇಬ್ಬರು ಪಡೆಯುವವರು (ಕರ್ಮಗಳನ್ನು ದಾಖಲಿಸುವ ದೇವದೂತರು) ಪಡೆಯುವ ಸಂದರ್ಭ. ಒಬ್ಬರು ಬಲಭಾಗದಲ್ಲಿ ಮತ್ತು ಇನ್ನೊಬ್ಬರು ಎಡಭಾಗದಲ್ಲಿ ಕುಳಿತಿರುವರು.

إِذۡ يَتَلَقَّى ٱلۡمُتَلَقِّيَانِ عَنِ ٱلۡيَمِينِ وَعَنِ ٱلشِّمَالِ قَعِيدٞ ١٧

18. ಮನುಷ್ಯನು ಯಾವುದೇ ಮಾತನ್ನೂ ಹೇಳಲಾರನು—ಅವನ ಬಳಿ ಒಬ್ಬ ವೀಕ್ಷಕನು (ಅದನ್ನು ದಾಖಲಿಸಲು) ಸಿದ್ಧವಾಗಿರದ ಹೊರತು.

مَّا يَلۡفِظُ مِن قَوۡلٍ إِلَّا لَدَيۡهِ رَقِيبٌ عَتِيدٞ ١٨

19. ಮರಣದ ಕಡು ಯಾತನೆಯು ಸತ್ಯದೊಂದಿಗೆ ಬರುವುದು. ಯಾವುದರಿಂದ ನೀನು ದೂರವಾಗಲು ಪ್ರಯತ್ನಿಸುತ್ತಿದ್ದೆಯೋ ಅದೇ ಇದು.

وَجَآءَتۡ سَكۡرَةُ ٱلۡمَوۡتِ بِٱلۡحَقِّۖ ذَٰلِكَ مَا كُنتَ مِنۡهُ تَحِيدُ ١٩

20. ಕಹಳೆಯಲ್ಲಿ ಊದಲಾಗುವುದು. ಅದು ಎಚ್ಚರಿಕೆಯ ದಿನವಾಗಿದೆ.

وَنُفِخَ فِي ٱلصُّورِۚ ذَٰلِكَ يَوۡمُ ٱلۡوَعِيدِ ٢٠

21. ಪ್ರತಿಯೊಬ್ಬ ವ್ಯಕ್ತಿಯೂ ತನ್ನ ಜೊತೆಗೆ ಒಬ್ಬ ಸಾಗಾಟಗಾರ ಮತ್ತು ಸಾಕ್ಷಿಯನ್ನು ಹೊಂದಿರುವ ಸ್ಥಿತಿಯಲ್ಲಿ ಬರುವರು.[1]

وَجَآءَتۡ كُلُّ نَفۡسٖ مَّعَهَا سَآئِقٞ وَشَهِيدٞ ٢١

22. "ನಿಶ್ಚಯವಾಗಿಯೂ ನೀನು ಇದನ್ನು ನಿರ್ಲಕ್ಷಿಸಿದ್ದೆ. ಆದರೆ ನಾವು ನಿನ್ನ ಮುಂಭಾಗದಿಂದ ಪರದೆಯನ್ನು ನಿವಾರಿಸಿದ್ದೇವೆ. ಆದ್ದರಿಂದ ಇಂದು ನಿನ್ನ ದೃಷ್ಟಿಯು ಬಹಳ ಹರಿತವಾಗಿದೆ."

لَّقَدۡ كُنتَ فِي غَفۡلَةٖ مِّنۡ هَٰذَا فَكَشَفۡنَا عَنكَ غِطَآءَكَ فَبَصَرُكَ ٱلۡيَوۡمَ حَدِيدٞ ٢٢

23. ಅವನ ಜೊತೆಗಾರನು (ದೇವದೂತ) ಹೇಳುವನು: "ನನ್ನ ಬಳಿಯಿರುವ ಇದು (ದಾಖಲೆ) ಸಿದ್ಧವಾಗಿದೆ."

وَقَالَ قَرِينُهُۥ هَٰذَا مَا لَدَيَّ عَتِيدٌ ٢٣

24. (ಅಲ್ಲಾಹು ಆಜ್ಞಾಪಿಸುವನು): "ಅವನನ್ನು ನರಕಕ್ಕೆ ಎಸೆದು ಬಿಡಿ—ಪ್ರತಿಯೊಬ್ಬ ಸತ್ಯನಿಷೇಧಿ ದುಷ್ಕರ್ಮಿಯನ್ನು.

أَلۡقِيَا فِي جَهَنَّمَ كُلَّ كَفَّارٍ عَنِيدٖ ٢٤

25. ಒಳಿತನ್ನು ತಡೆಯುವ ಅತಿರೇಕಿ ಸಂಶಯಪಿಶಾಚಿಯನ್ನು.

مَّنَّاعٖ لِّلۡخَيۡرِ مُعۡتَدٖ مُّرِيبٍ ٢٥

26. ಅಲ್ಲಾಹನೊಂದಿಗೆ ಬೇರೆ ದೇವರುಗಳನ್ನು ನಿಶ್ಚಯಿಸಿದವನನ್ನು.

ٱلَّذِي جَعَلَ مَعَ ٱللَّهِ إِلَٰهًا ءَاخَرَ فَأَلۡقِيَاهُ فِي

[1] ಪ್ರತಿಯೊಬ್ಬ ಮನುಷ್ಯನ ಜೊತೆಗೆ ಅವನನ್ನು ವಿಚಾರಣಾ ಸ್ಥಳಕ್ಕೆ ಸಾಗಿಸುವ ಒಬ್ಬ ದೇವದೂತ ಮತ್ತು ಅವನ ಕರ್ಮಗಳಿಗೆ ಸಾಕ್ಷಿ ನುಡಿಯುವ ಒಬ್ಬ ದೇವದೂತ ಇರಲಿದ್ದಾರೆ.

ಅವನನ್ನು ಕಠೋರ ಶಿಕ್ಷೆಗೆ ಎಸೆದುಬಿಡಿ.”

ٱلْعَذَابِ ٱلشَّدِيدِ ٢٦

27. ಅವನ ಜೊತೆಗಾರನು[1] ಹೇಳುವನು: “ನಮ್ಮ ಪರಿಪಾಲಕನೇ! ನಾನು ಅವನನ್ನು ದಾರಿತಪ್ಪಿಸಿಲ್ಲ. ಬದಲಿಗೆ, ಅವನೇ ವಿದೂರ ದುರ್ಮಾರ್ಗದಲ್ಲಿದ್ದ.”

قَالَ قَرِينُهُۥ رَبَّنَا مَآ أَطْغَيْتُهُۥ وَلَٰكِن كَانَ فِى ضَلَٰلٍۭ بَعِيدٍ ٢٧

28. ಅಲ್ಲಾಹು ಹೇಳುವನು: “ನನ್ನ ಮುಂದೆ ತರ್ಕ ಮಾಡಬೇಡಿ. ನಾನು ಈಗಾಗಲೇ ನಿಮ್ಮ ಬಳಿಗೆ ಎಚ್ಚರಿಕೆಯನ್ನು ಕಳುಹಿಸಿದ್ದೇನೆ.

قَالَ لَا تَخْتَصِمُوا۟ لَدَىَّ وَقَدْ قَدَّمْتُ إِلَيْكُم بِٱلْوَعِيدِ ٢٨

29. ನನ್ನ ಬಳಿ ಮಾತು ಬದಲಾಗುವುದಿಲ್ಲ. ನಾನು ದಾಸರಿಗೆ ಸ್ವಲ್ಪವೂ ಅನ್ಯಾಯ ಮಾಡುವವನಲ್ಲ.”

مَا يُبَدَّلُ ٱلْقَوْلُ لَدَىَّ وَمَآ أَنَا۠ بِظَلَّٰمٍ لِّلْعَبِيدِ ٢٩

30. ನಾವು ನರಕದೊಂದಿಗೆ, “ನೀನು ತುಂಬಿದೆಯಾ?” ಎಂದು ಕೇಳುವ ಸಂದರ್ಭ. ಆಗ ಅದು ಕೇಳುವುದು: “ಹೆಚ್ಚು ಏನಾದರೂ ಇದೆಯೇ?”

يَوْمَ نَقُولُ لِجَهَنَّمَ هَلِ ٱمْتَلَأْتِ وَتَقُولُ هَلْ مِن مَّزِيدٍ ٣٠

31. ಸ್ವರ್ಗವನ್ನು ದೇವಭಯವುಳ್ಳವರ ಹತ್ತಿರಕ್ಕೆ ತರಲಾಗುವುದು. ಅದು ಅವರಿಗೆ ಸ್ವಲ್ಪವೂ ದೂರವಿರಲಾರದು.

وَأُزْلِفَتِ ٱلْجَنَّةُ لِلْمُتَّقِينَ غَيْرَ بَعِيدٍ ٣١

32. “ಇದು ನಿಮಗೆ—ನಿಮ್ಮ ಪೈಕಿ (ಅಲ್ಲಾಹನ ಕಡೆಗೆ ಪಶ್ಚಾತ್ತಪಪಟ್ಟು) ಮರಳುವ ಮತ್ತು (ಅಲ್ಲಾಹು ಕಡ್ಡಾಯಗೊಳಿಸಿದ್ದನ್ನು) ಪಾಲಿಸುವ ಪ್ರತಿಯೊಬ್ಬ ವ್ಯಕ್ತಿಗೆ—ವಾಗ್ದಾನ ಮಾಡಲಾದ ಸಂಗತಿಯಾಗಿದೆ.

هَٰذَا مَا تُوعَدُونَ لِكُلِّ أَوَّابٍ حَفِيظٍ ٣٢

33. ಅದೃಶ್ಯ ಸ್ಥಿತಿಯಲ್ಲಿ ಪರಮ ದಯಾಮಯನನ್ನು (ಅಲ್ಲಾಹನನ್ನು) ಭಯಪಟ್ಟು (ಅಲ್ಲಾಹನ ಕಡೆಗೆ) ತಿರುಗಿದ ಹೃದಯದೊಂದಿಗೆ ಬಂದವನಿಗೆ.

مَّنْ خَشِىَ ٱلرَّحْمَٰنَ بِٱلْغَيْبِ وَجَآءَ بِقَلْبٍ مُّنِيبٍ ٣٣

34. ನೀವು ಸುರಕ್ಷಿತವಾಗಿ ಅದನ್ನು (ಸ್ವರ್ಗವನ್ನು) ಪ್ರವೇಶಿಸಿರಿ. ಇದು ಶಾಶ್ವತ ವಾಸದ ದಿನವಾಗಿದೆ.”

ٱدْخُلُوهَا بِسَلَٰمٍ ۖ ذَٰلِكَ يَوْمُ ٱلْخُلُودِ ٣٤

35. ಅವರು ಇಚ್ಛಿಸುವುದೆಲ್ಲವೂ ಅಲ್ಲಿ ಅವರಿಗೆ ದೊರೆಯುವುದು. ನಮ್ಮ ಬಳಿ ಇನ್ನೂ ಹೆಚ್ಚಿಗೆಯಿದೆ.

لَهُم مَّا يَشَآءُونَ فِيهَا وَلَدَيْنَا مَزِيدٌ ٣٥

36. ಇವರಿಗಿಂತ ಮೊದಲು ನಾವು ಅನೇಕ ತಲೆಮಾರುಗಳನ್ನು ನಾಶ ಮಾಡಿದ್ದೇವೆ. ಅವರು ಇವರಿಗಿಂತಲೂ ಹೆಚ್ಚು ಶಕ್ತಿಶಾಲಿಗಳಾ-ಗಿದ್ದರು. ಅವರು ಊರಿಡೀ ಜಾಲಾಡಿ ನೋಡಿದರು—ಓಡಿ ಪಾರಾಗಲು ಯಾವುದಾದರೂ ಸ್ಥಳವಿದೆಯೇ ಎಂದು!

وَكَمْ أَهْلَكْنَا قَبْلَهُم مِّن قَرْنٍ هُمْ أَشَدُّ مِنْهُم بَطْشًا فَنَقَّبُوا۟ فِى ٱلْبِلَٰدِ هَلْ مِن مَّحِيصٍ ٣٦

37. ನಿಶ್ಚಯವಾಗಿಯೂ ಅದರಲ್ಲಿ ನೀತಿಪಾಠವಿದೆ—ಹೃದಯವುಳ್ಳ ವ್ಯಕ್ತಿಗೆ ಅಥವಾ ಹೃದಯ ಸಾನಿಧ್ಯತೆಯಿಂದ ಕಿವಿಗೊಟ್ಟು ಕೇಳುವವನಿಗೆ.

إِنَّ فِى ذَٰلِكَ لَذِكْرَىٰ لِمَن كَانَ لَهُۥ قَلْبٌ أَوْ أَلْقَى ٱلسَّمْعَ وَهُوَ شَهِيدٌ ٣٧

---

[1] ಜೊತೆಗಾರನು (ಕರೀನ್) ಎಂದರೆ ಪ್ರತಿಯೊಬ್ಬ ಮನುಷ್ಯನ ಜೊತೆಯಲ್ಲಿರುವ ಶೈತಾನ್.

| | | |
|---|---|---|
| 38. | ನಾವು ಭೂಮ್ಯಾಕಾಶಗಳನ್ನು ಮತ್ತು ಅವುಗಳ ನಡುವೆಯಿರುವ ವಸ್ತುಗಳನ್ನು ಆರು ದಿನಗಳಲ್ಲಿ ಸೃಷ್ಟಿಸಿದೆವು. ಆಯಾಸವು ನಮ್ಮನ್ನು ಸ್ಪರ್ಶಿಸಲೇ ಇಲ್ಲ. | وَلَقَدۡ خَلَقۡنَا ٱلسَّمَٰوَٰتِ وَٱلۡأَرۡضَ وَمَا بَيۡنَهُمَا فِي سِتَّةِ أَيَّامٖ وَمَا مَسَّنَا مِن لُّغُوبٖ ﴿٣٨﴾ |
| 39. | ಆದ್ದರಿಂದ ಅವರು ಹೇಳುವ ಮಾತುಗಳ ಬಗ್ಗೆ ತಾಳ್ಮೆಯಿಂದಿರಿ. ಸೂರ್ಯೋದಯಕ್ಕೆ ಮೊದಲು ಮತ್ತು ಸೂರ್ಯಾಸ್ತಕ್ಕೆ ಮೊದಲು ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಸ್ತುತಿಸುತ್ತಾ ಅವರ ಪರಿಶುದ್ಧಿಯನ್ನು ಕೊಂಡಾಡಿರಿ. | فَٱصۡبِرۡ عَلَىٰ مَا يَقُولُونَ وَسَبِّحۡ بِحَمۡدِ رَبِّكَ قَبۡلَ طُلُوعِ ٱلشَّمۡسِ وَقَبۡلَ ٱلۡغُرُوبِ ﴿٣٩﴾ |
| 40. | ರಾತ್ರಿಯ ಸಮಯದಲ್ಲೂ ಮತ್ತು ನಮಾಝ್ ನಿರ್ವಹಿಸಿದ ಬಳಿಕವೂ ಅವನ ಪರಿಶುದ್ಧಿಯನ್ನು ಕೊಂಡಾಡಿರಿ. | وَمِنَ ٱلَّيۡلِ فَسَبِّحۡهُ وَأَدۡبَٰرَ ٱلسُّجُودِ ﴿٤٠﴾ |
| 41. | ಕಿವಿಗೊಟ್ಟು ಕೇಳಿರಿ. ಕರೆಯುವವನು ಹತ್ತಿರದಲ್ಲೇ ಇರುವ ಒಂದು ಸ್ಥಳದಿಂದ ಕೂಗಿ ಕರೆಯುವ ದಿನ. | وَٱسۡتَمِعۡ يَوۡمَ يُنَادِ ٱلۡمُنَادِ مِن مَّكَانٖ قَرِيبٖ ﴿٤١﴾ |
| 42. | ಆ ಭಯಾನಕ ಚೀತ್ಕಾರವನ್ನು ಖಾತ್ರಿಯಾಗಿ ಕೇಳುವ ದಿನ! ಅದು ಹೊರಡುವ ದಿನವಾಗಿದೆ. | يَوۡمَ يَسۡمَعُونَ ٱلصَّيۡحَةَ بِٱلۡحَقِّۚ ذَٰلِكَ يَوۡمُ ٱلۡخُرُوجِ ﴿٤٢﴾ |
| 43. | ನಿಶ್ಚಯವಾಗಿಯೂ ನಾವು ಜೀವ ಮತ್ತು ಮರಣವನ್ನು ನೀಡುವೆವು. ಗಮ್ಯಸ್ಥಾನವು ನಮ್ಮ ಬಳಿಯೇ ಆಗಿದೆ. | إِنَّا نَحۡنُ نُحۡيِۦ وَنُمِيتُ وَإِلَيۡنَا ٱلۡمَصِيرُ ﴿٤٣﴾ |
| 44. | ಭೂಮಿಯು ಒಡೆದು ಸೀಳಾಗಿ ಅವರು ತರಾತುರಿಯಿಂದ (ಹೊರಬರುವ) ದಿನ. ಅವರನ್ನು ಒಟ್ಟುಗೂಡಿಸುವುದು ನಮ್ಮ ಮಟ್ಟಿಗೆ ಬಹಳ ಸುಲಭವಾಗಿದೆ. | يَوۡمَ تَشَقَّقُ ٱلۡأَرۡضُ عَنۡهُمۡ سِرَاعٗاۚ ذَٰلِكَ حَشۡرٌ عَلَيۡنَا يَسِيرٞ ﴿٤٤﴾ |
| 45. | ಅವರು ಏನು ಹೇಳುತ್ತಿದ್ದಾರೆಂದು ನಮಗೆ ಚೆನ್ನಾಗಿ ತಿಳಿದಿದೆ. ನೀವು ಅವರ ಮೇಲೆ ಸರ್ವಾಧಿಕಾರವಿರುವವರಲ್ಲ. ನನ್ನ ಎಚ್ಚರಿಕೆಯನ್ನು ಭಯಪಡುವವರಿಗೆ ಕುರ್‌ಆನ್‌ನ ಮೂಲಕ ಉಪದೇಶವನ್ನು ನೀಡಿರಿ. | نَّحۡنُ أَعۡلَمُ بِمَا يَقُولُونَۖ وَمَآ أَنتَ عَلَيۡهِم بِجَبَّارٖۖ فَذَكِّرۡ بِٱلۡقُرۡءَانِ مَن يَخَافُ وَعِيدِ ﴿٤٥﴾ |

# 51. ಅದ್ದಾರಿಯಾತ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ಬಲವಾಗಿ ಧೂಳಿಯನ್ನು ಹರಡುವ (ಗಾಳಿಯ) ಮೇಲಾಣೆ! | وَٱلذَّٰرِيَٰتِ ذَرۡوٗا ١ |
| 2. | ಭಾರವನ್ನು ಹೊರುವ (ಮೋಡಗಳ) ಮೇಲಾಣೆ! | فَٱلۡحَٰمِلَٰتِ وِقۡرٗا ٢ |
| 3. | ಸುಗಮವಾಗಿ ಸಂಚರಿಸುವ (ಹಡಗುಗಳ) ಮೇಲಾಣೆ! | فَٱلۡجَٰرِيَٰتِ يُسۡرٗا ٣ |
| 4. | ಕಾರ್ಯಗಳನ್ನು ವಿಂಗಡಿಸಿಕೊಡುವ (ದೇವದೂತರುಗಳ) ಮೇಲಾಣೆ! | فَٱلۡمُقَسِّمَٰتِ أَمۡرًا ٤ |
| 5. | ನಿಶ್ಚಯವಾಗಿಯೂ ನಿಮಗೆ ಎಚ್ಚರಿಕೆ ನೀಡಲಾಗುವ ವಿಷಯವು ಸತ್ಯವಾಗಿದೆ. | إِنَّمَا تُوعَدُونَ لَصَادِقٞ ٥ |
| 6. | ನಿಶ್ಚಯವಾಗಿಯೂ ವಿಚಾರಣೆಯು ಸಂಭವಿಸಿಯೇ ತೀರುತ್ತದೆ. | وَإِنَّ ٱلدِّينَ لَوَٰقِعٞ ٦ |
| 7. | ಕಕ್ಷೆಗಳನ್ನು ಹೊಂದಿರುವ ಆಕಾಶದ ಮೇಲಾಣೆ! | وَٱلسَّمَآءِ ذَاتِ ٱلۡحُبُكِ ٧ |
| 8. | ನಿಶ್ಚಯವಾಗಿಯೂ ನೀವು ವಿಭಿನ್ನ ಅಭಿಪ್ರಾಯಗಳಲ್ಲಿದ್ದೀರಿ. | إِنَّكُمۡ لَفِي قَوۡلٖ مُّخۡتَلِفٖ ٨ |
| 9. | (ಸತ್ಯದಿಂದ) ತಪ್ಪಿಸಲ್ಪಟ್ಟವನು ಅದರಿಂದ (ಕುರ್‌ಆನ್‌ನಿಂದ) ತಪ್ಪಿಸಲ್ಪಡುತ್ತಾನೆ. | يُؤۡفَكُ عَنۡهُ مَنۡ أُفِكَ ٩ |
| 10. | ಆಧಾರರಹಿತ ಮಾತುಗಳನ್ನು ಹೇಳುವವರು ನಾಶವಾಗಿದ್ದಾರೆ. | قُتِلَ ٱلۡخَرَّٰصُونَ ١٠ |
| 11. | ಅವರು ಅಜ್ಞಾನದಲ್ಲಿದ್ದಾರೆ ಮತ್ತು ಮರೆತುಬಿಟ್ಟಿದ್ದಾರೆ. | ٱلَّذِينَ هُمۡ فِي غَمۡرَةٖ سَاهُونَ ١١ |
| 12. | "ಪ್ರತಿಫಲದ ದಿನ ಯಾವಾಗ?" ಎಂದು ಅವರು ಕೇಳುತ್ತಾರೆ. | يَسۡـَٔلُونَ أَيَّانَ يَوۡمُ ٱلدِّينِ ١٢ |
| 13. | ಅವರನ್ನು ನರಕಾಗ್ನಿಯಲ್ಲಿ ಶಿಕ್ಷಿಸಲಾಗುವ ದಿನ. | يَوۡمَ هُمۡ عَلَى ٱلنَّارِ يُفۡتَنُونَ ١٣ |
| 14. | (ಅವರೊಂದಿಗೆ ಹೇಳಲಾಗುವುದು): "ನಿಮ್ಮ ಶಿಕ್ಷೆಯ ರುಚಿಯನ್ನು ನೋಡಿರಿ. ಇದಕ್ಕೇ ನೀವು ತ್ವರೆ ಮಾಡುತ್ತಿದ್ದಿರಿ." | ذُوقُواْ فِتۡنَتَكُمۡ هَٰذَا ٱلَّذِي كُنتُم بِهِۦ تَسۡتَعۡجِلُونَ ١٤ |
| 15. | ನಿಶ್ಚಯವಾಗಿಯೂ ದೇವಭಯವುಳ್ಳವರು ಸ್ವರ್ಗೋದ್ಯಾನಗಳಲ್ಲಿ ಮತ್ತು ತೊರೆಗಳಲ್ಲಿರುವರು. | إِنَّ ٱلۡمُتَّقِينَ فِي جَنَّٰتٖ وَعُيُونٍ ١٥ |
| 16. | ಅವರಿಗೆ ಅವರ ಪರಿಪಾಲಕನು (ಅಲ್ಲಾಹು) ನೀಡಿದ್ದನ್ನು ಅವರು ಪಡೆಯುವರು. ನಿಶ್ಚಯವಾಗಿಯೂ ಇದಕ್ಕಿಂತ ಮೊದಲು ಅವರು ನೀತಿವಂತರಾಗಿದ್ದರು. | ءَاخِذِينَ مَآ ءَاتَىٰهُمۡ رَبُّهُمۡۚ إِنَّهُمۡ كَانُواْ قَبۡلَ ذَٰلِكَ مُحۡسِنِينَ ١٦ |
| 17. | ಅವರು ರಾತ್ರಿಯಲ್ಲಿ ಬಹಳ ಕಡಿಮೆ ನಿದ್ರಿಸುತ್ತಿದ್ದರು. | كَانُواْ قَلِيلٗا مِّنَ ٱلَّيۡلِ مَا يَهۡجَعُونَ ١٧ |

18. ಸಹರಿಯ ಸಮಯದಲ್ಲಿ ಅವರು (ಅಲ್ಲಾಹನಲ್ಲಿ) ಕ್ಷಮೆಯಾಚಿಸುತ್ತಿದ್ದರು. وَبِٱلۡأَسۡحَارِ هُمۡ يَسۡتَغۡفِرُونَ ١٨

19. ಅವರ ಧನದಲ್ಲಿ ಬೇಡುವವರಿಗೆ ಮತ್ತು (ಉಪಜೀವನ) ತಡೆಯಲ್ಪಟ್ಟವರಿಗೆ ಹಕ್ಕಿತ್ತು. وَفِيٓ أَمۡوَٰلِهِمۡ حَقّٞ لِّلسَّآئِلِ وَٱلۡمَحۡرُومِ ١٩

20. ದೃಢವಿಶ್ವಾಸವುಳ್ಳವರಿಗೆ ಭೂಮಿಯಲ್ಲಿ ಅನೇಕ ದೃಷ್ಟಾಂತಗಳಿವೆ. وَفِي ٱلۡأَرۡضِ ءَايَٰتٞ لِّلۡمُوقِنِينَ ٢٠

21. ನಿಮ್ಮ ದೇಹಗಳಲ್ಲೂ ಕೂಡ. ಆದರೂ ನೀವು ನೋಡುವುದಿಲ್ಲವೇ? وَفِيٓ أَنفُسِكُمۡۚ أَفَلَا تُبۡصِرُونَ ٢١

22. ಆಕಾಶದಲ್ಲಿ ನಿಮ್ಮ ಉಪಜೀವನ ಮತ್ತು ನಿಮಗೆ ವಾಗ್ದಾನ ಮಾಡಲಾಗುವ ಎಲ್ಲವೂ ಇದೆ. وَفِي ٱلسَّمَآءِ رِزۡقُكُمۡ وَمَا تُوعَدُونَ ٢٢

23. ಭೂಮ್ಯಾಕಾಶಗಳ ಪರಿಪಾಲಕನ (ಅಲ್ಲಾಹನ) ಮೇಲಾಣೆ! ನೀವು ಹೇಗೆ ಮಾತನಾಡುತ್ತಿರುವಿರೋ ಹಾಗೆಯೇ ಇವೆಲ್ಲವೂ ಸತ್ಯವಾಗಿದೆ.[1] فَوَرَبِّ ٱلسَّمَآءِ وَٱلۡأَرۡضِ إِنَّهُۥ لَحَقّٞ مِّثۡلَ مَآ أَنَّكُمۡ تَنطِقُونَ ٢٣

24. ಇಬ್ರಾಹೀಮರ ಸನ್ಮಾನ್ಯ ಅತಿಥಿಗಳ ಸಮಾಚಾರವು ನಿಮಗೆ ತಲುಪಿದೆಯೇ? هَلۡ أَتَىٰكَ حَدِيثُ ضَيۡفِ إِبۡرَٰهِيمَ ٱلۡمُكۡرَمِينَ ٢٤

25. ಅವರು ಇಬ್ರಾಹೀಮರ ಬಳಿಗೆ ಬಂದು ಸಲಾಂ ಹೇಳಿದ ಸಂದರ್ಭ. ಇಬ್ರಾಹೀಮ್ ಸಲಾಂಗೆ ಉತ್ತರಿಸಿ ಹೇಳಿದರು: "ನೀವು ಅಪರಿಚಿತ ಜನರಂತೆ ಕಾಣುತ್ತೀರಿ." إِذۡ دَخَلُواْ عَلَيۡهِ فَقَالُواْ سَلَٰمٗاۖ قَالَ سَلَٰمٞ قَوۡمٞ مُّنكَرُونَ ٢٥

26. ನಂತರ ಅವರು ಆತುರದಿಂದ ತಮ್ಮ ಮನೆಯವರ ಕಡೆಗೆ ತೆರಳಿ ಒಂದು ಕೊಬ್ಬಿದ ಕರುವನ್ನು (ಬೇಯಿಸಿ) ತಂದರು. فَرَاغَ إِلَىٰٓ أَهۡلِهِۦ فَجَآءَ بِعِجۡلٖ سَمِينٖ ٢٦

27. ಅದನ್ನು ಅವರ ಮುಂದೆ ಇಟ್ಟರು. ನಂತರ ಕೇಳಿದರು: "ನೀವೇಕೆ ತಿನ್ನುವುದಿಲ್ಲ?" فَقَرَّبَهُۥٓ إِلَيۡهِمۡ قَالَ أَلَا تَأۡكُلُونَ ٢٧

28. ಇಬ್ರಾಹೀಮರಿಗೆ ಅವರ ಬಗ್ಗೆ ಮನಸ್ಸಿನಲ್ಲಿ ಗಾಬರಿ ಉಂಟಾಯಿತು. ಅವರು ಹೇಳಿದರು: "ಗಾಬರಿಯಾಗಬೇಡಿ." ಅವರು ಇಬ್ರಾಹೀಮರಿಗೆ ಜ್ಞಾನವಂತ ಮಗುವಿನ (ಜನನದ ಬಗ್ಗೆ) ಸುವಾರ್ತೆ ತಿಳಿಸಿದರು. فَأَوۡجَسَ مِنۡهُمۡ خِيفَةٗۖ قَالُواْ لَا تَخَفۡۖ وَبَشَّرُوهُ بِغُلَٰمٍ عَلِيمٖ ٢٨

29. ಅವರ ಪತ್ನಿ ಸದ್ದು ಮಾಡುತ್ತಾ ಮುಂದಕ್ಕೆ ಬಂದು ತನ್ನ ಮುಖಕ್ಕೆ ಬಡಿದು ಹೇಳಿದರು: "ನಾನೊಬ್ಬ ಮುದುಕಿ ಮತ್ತು ಬಂಜೆಯಾಗಿದ್ದೇನೆ." فَأَقۡبَلَتِ ٱمۡرَأَتُهُۥ فِي صَرَّةٖ فَصَكَّتۡ وَجۡهَهَا وَقَالَتۡ عَجُوزٌ عَقِيمٞ ٢٩

---

[1] ನಿಮಗೆ ಮಾತನಾಡುವ ಶಕ್ತಿಯಿರುವುದನ್ನು ನೀವು ಹೇಗೆ ನಿರಾಕರಿಸುವುದಿಲ್ಲವೋ ಹಾಗೆಯೇ ಮೇಲೆ ಹೇಳಿದ ವಿಷಯಗಳೆಲ್ಲವೂ ನಿರಾಕರಿಸಲಾಗದ ಸತ್ಯವಾಗಿದೆ.

| | | |
|---|---|---|
| 30. | ದೇವದೂತರುಗಳು ಹೇಳಿದರು: "ಈ ರೀತಿ ನಿಮ್ಮ ಪರಿಪಾಲಕನು (ಅಲ್ಲಾಹು) ಹೇಳಿದ್ದಾನೆ. ನಿಶ್ಚಯವಾಗಿಯೂ ಅವನು ವಿವೇಕಪೂರ್ಣನು ಮತ್ತು ಸರ್ವಜ್ಞನಾಗಿದ್ದಾನೆ." | قَالُواْ كَذَٰلِكِ قَالَ رَبُّكِۖ إِنَّهُۥ هُوَ ٱلۡحَكِيمُ ٱلۡعَلِيمُ ﴿٣٠﴾ |
| 31. | ಇಬ್ರಾಹೀಮ್ ಕೇಳಿದರು: "ಓ ದೂತರೇ! ಇಲ್ಲಿ ನಿಮಗೇನು ಕೆಲಸವಿದೆಯೆಂದು ಬಂದಿದ್ದೀರಿ?" | قَالَ فَمَا خَطۡبُكُمۡ أَيُّهَا ٱلۡمُرۡسَلُونَ ﴿٣١﴾ |
| 32. | ಅವರು ಉತ್ತರಿಸಿದರು: "ನಮ್ಮನ್ನು ಅಪರಾಧಿಗಳಾದ ಜನರ ಬಳಿಗೆ ಕಳುಹಿಸಲಾಗಿದೆ. | قَالُوٓاْ إِنَّآ أُرۡسِلۡنَآ إِلَىٰ قَوۡمٖ مُّجۡرِمِينَ ﴿٣٢﴾ |
| 33. | ಅವರ ಮೇಲೆ ಜೇಡಿಮಣ್ಣಿನ ಕಲ್ಲುಗಳನ್ನು ಸುರಿಸುವುದಕ್ಕಾಗಿ. | لِنُرۡسِلَ عَلَيۡهِمۡ حِجَارَةٗ مِّن طِينٖ ﴿٣٣﴾ |
| 34. | ಅದು ಎಲ್ಲೆ ಮೀರಿದ ಜನರಿಗೆ ಅವರ ಪರಿಪಾಲಕನ (ಅಲ್ಲಾಹನ) ಬಳಿ ಗುರುತು ಹಾಕಲಾದ ಕಲ್ಲುಗಳಾಗಿವೆ." | مُّسَوَّمَةً عِندَ رَبِّكَ لِلۡمُسۡرِفِينَ ﴿٣٤﴾ |
| 35. | ನಾವು ಅಲ್ಲಿದ್ದ ಎಲ್ಲಾ ಸತ್ಯವಿಶ್ವಾಸಿಗಳನ್ನು ಹೊರತೆಗೆದೆವು (ರಕ್ಷಿಸಿದೆವು). | فَأَخۡرَجۡنَا مَن كَانَ فِيهَا مِنَ ٱلۡمُؤۡمِنِينَ ﴿٣٥﴾ |
| 36. | ಆದರೆ ನಾವು ಅಲ್ಲಿ ಮುಸ್ಲಿಮರಿಗೆ ಸೇರಿದ ಒಂದೇ ಒಂದು ಮನೆಯನ್ನು ಮಾತ್ರ ಕಂಡೆವು. | فَمَا وَجَدۡنَا فِيهَا غَيۡرَ بَيۡتٖ مِّنَ ٱلۡمُسۡلِمِينَ ﴿٣٦﴾ |
| 37. | ಯಾತನಾಮಯ ಶಿಕ್ಷೆಯನ್ನು ಭಯಪಡುವವರಿಗೆ ನಾವು ಅಲ್ಲಿ ಒಂದು ದೃಷ್ಟಾಂತವನ್ನು ಉಳಿಸಿದೆವು. | وَتَرَكۡنَا فِيهَآ ءَايَةٗ لِّلَّذِينَ يَخَافُونَ ٱلۡعَذَابَ ٱلۡأَلِيمَ ﴿٣٧﴾ |
| 38. | ಮೂಸಾರ ಸಮಾಚಾರದಲ್ಲೂ (ದೃಷ್ಟಾಂತಗಳಿವೆ). ನಾವು ಅವರನ್ನು ಸ್ಪಷ್ಟ ಸಾಕ್ಷ್ಯಾಧಾರಗಳೊಂದಿಗೆ ಫರೋಹನ ಬಳಿಗೆ ಕಳುಹಿಸಿದ ಸಂದರ್ಭ. | وَفِي مُوسَىٰٓ إِذۡ أَرۡسَلۡنَٰهُ إِلَىٰ فِرۡعَوۡنَ بِسُلۡطَٰنٖ مُّبِينٖ ﴿٣٨﴾ |
| 39. | ಆದರೆ ಅವನು ತನ್ನ ಶಕ್ತಿಸಾಮರ್ಥ್ಯಕ್ಕೆ ಮರುಳಾಗಿ ಮುಖ ತಿರುಗಿಸುತ್ತಾ ಹೇಳಿದನು: "ಇವನೊಬ್ಬ ಮಾಟಗಾರ ಅಥವಾ ಮಾನಸಿಕ ಅಸ್ವಸ್ಥ." | فَتَوَلَّىٰ بِرُكۡنِهِۦ وَقَالَ سَٰحِرٌ أَوۡ مَجۡنُونٞ ﴿٣٩﴾ |
| 40. | ಆದ್ದರಿಂದ ನಾವು ಅವನನ್ನು ಮತ್ತು ಅವನ ಸೈನ್ಯಗಳನ್ನು ಹಿಡಿದು ಸಮುದ್ರಕ್ಕೆ ಎಸೆದೆವು. ಅವನು ಆಕ್ಷೇಪಾರ್ಹನಾಗಿದ್ದನು. | فَأَخَذۡنَٰهُ وَجُنُودَهُۥ فَنَبَذۡنَٰهُمۡ فِي ٱلۡيَمِّ وَهُوَ مُلِيمٞ ﴿٤٠﴾ |
| 41. | ಆದ್ ಗೋತ್ರದಲ್ಲೂ (ದೃಷ್ಟಾಂತವಿದೆ). ನಾವು ಅವರ ವಿರುದ್ಧ ಬರಡು ಗಾಳಿಯನ್ನು ಕಳುಹಿಸಿದ ಸಂದರ್ಭ. | وَفِي عَادٍ إِذۡ أَرۡسَلۡنَا عَلَيۡهِمُ ٱلرِّيحَ ٱلۡعَقِيمَ ﴿٤١﴾ |
| 42. | ಅದು ಯಾವೆಲ್ಲಾ ವಸ್ತುಗಳ ಮೇಲೆ ಬೀಸುತ್ತಿತ್ತೋ ಅವೆಲ್ಲವನ್ನೂ ಕೊಳೆತ ತುಣುಕುಗಳಂತೆ (ಚೂರು ಚೂರು) ಮಾಡುತ್ತಿತ್ತು. | مَا تَذَرُ مِن شَيۡءٍ أَتَتۡ عَلَيۡهِ إِلَّا جَعَلَتۡهُ كَٱلرَّمِيمِ ﴿٤٢﴾ |
| 43. | ಸಮೂದ್ ಗೋತ್ರದಲ್ಲೂ (ದೃಷ್ಟಾಂತವಿದೆ). "ಒಂದು | وَفِي ثَمُودَ إِذۡ قِيلَ لَهُمۡ تَمَتَّعُواْ حَتَّىٰ حِينٖ ﴿٤٣﴾ |

ಅವಧಿಯವರೆಗೆ ಆನಂದಿಸಿರಿ” ಎಂದು ಅವರೊಡನೆ ಹೇಳಲಾದ ಸಂದರ್ಭ.

44. ಆದರೆ ಅವರು ತಮ್ಮ ಪರಿಪಾಲಕನ (ಅಲ್ಲಾಹನ) ಆಜ್ಞೆಯನ್ನು ಧಿಕ್ಕರಿಸಿದರು. ಆಗ ಅವರು ನೋಡುತ್ತಿದ್ದಂತೆಯೇ ಭಯಾನಕ ಶಬ್ದವು ಅವರನ್ನು ಹಿಡಿಯಿತು.

فَعَتَوْاْ عَنْ أَمْرِ رَبِّهِمْ فَأَخَذَتْهُمُ ٱلصَّٰعِقَةُ وَهُمْ يَنظُرُونَ ﴿٤٤﴾

45. ಅವರಿಗೆ ಎದ್ದು ನಿಲ್ಲಲು ಕೂಡ ಸಾಧ್ಯವಾಗಲಿಲ್ಲ. ಅವರಿಗೆ ಸ್ವಯಂ ರಕ್ಷಿಸಿಕೊಳ್ಳಲೂ ಸಾಧ್ಯವಾಗಲಿಲ್ಲ.

فَمَا ٱسْتَطَٰعُواْ مِن قِيَامٍ وَمَا كَانُواْ مُنتَصِرِينَ ﴿٤٥﴾

46. ಅದಕ್ಕಿಂತ ಮೊದಲು ನೂಹರ ಜನರಿಗೂ (ಇದೇ ಸ್ಥಿತಿ ಉಂಟಾಗಿತ್ತು). ನಿಶ್ಚಯವಾಗಿಯೂ ಅವರು ದುಷ್ಕರ್ಮಿಗಳಾದ ಜನರಾಗಿದ್ದರು.

وَقَوْمَ نُوحٍ مِّن قَبْلُ ۖ إِنَّهُمْ كَانُواْ قَوْمًا فَٰسِقِينَ ﴿٤٦﴾

47. ನಾವು ಆಕಾಶವನ್ನು ಕೈಗಳಿಂದ ನಿರ್ಮಿಸಿದ್ದೇವೆ. ನಿಶ್ಚಯವಾಗಿಯೂ ನಾವು ವಿಸ್ತರಿಸುವವರಾಗಿದ್ದೇವೆ.

وَٱلسَّمَآءَ بَنَيْنَٰهَا بِأَيْيْدٍ وَإِنَّا لَمُوسِعُونَ ﴿٤٧﴾

48. ನಾವು ಭೂಮಿಯನ್ನು ಹಾಸಿನಂತೆ ಹರಡಿದ್ದೇವೆ. ನಾವು ಅತ್ಯುತ್ತಮವಾಗಿ ಹಾಸುವವರಾಗಿದ್ದೇವೆ.

وَٱلْأَرْضَ فَرَشْنَٰهَا فَنِعْمَ ٱلْمَٰهِدُونَ ﴿٤٨﴾

49. ನಾವು ಎಲ್ಲ ವಸ್ತುಗಳನ್ನೂ ಜೋಡಿಯಾಗಿ ಸೃಷ್ಟಿಸಿದ್ದೇವೆ. ನೀವು ಉಪದೇಶ ಸ್ವೀಕರಿಸುವುದಕ್ಕಾಗಿ.

وَمِن كُلِّ شَىْءٍ خَلَقْنَا زَوْجَيْنِ لَعَلَّكُمْ تَذَكَّرُونَ ﴿٤٩﴾

50. ಆದ್ದರಿಂದ ನೀವು ಅಲ್ಲಾಹನ ಕಡೆಗೆ (ಪಶ್ಚಾತ್ತಾಪದೊಂದಿಗೆ) ಧಾವಿಸಿರಿ. ನಿಶ್ಚಯವಾಗಿಯೂ ನಾನು ನಿಮಗೆ ಅವನ ಕಡೆಯ ಸ್ಪಷ್ಟ ಮುನ್ನೆಚ್ಚರಿಕೆಗಾರನಾಗಿದ್ದೇನೆ.

فَفِرُّوٓاْ إِلَى ٱللَّهِ ۖ إِنِّى لَكُم مِّنْهُ نَذِيرٌ مُّبِينٌ ﴿٥٠﴾

51. ನೀವು ಅಲ್ಲಾಹನೊಂದಿಗೆ ಬೇರೆ ದೇವರುಗಳನ್ನು ಮಾಡಿಕೊಳ್ಳಬೇಡಿ. ನಿಶ್ಚಯವಾಗಿಯೂ ನಾನು ನಿಮಗೆ ಅವನ ಕಡೆಯ ಸ್ಪಷ್ಟ ಮುನ್ನೆಚ್ಚರಿಕೆಗಾರನಾಗಿದ್ದೇನೆ.

وَلَا تَجْعَلُواْ مَعَ ٱللَّهِ إِلَٰهًا ءَاخَرَ ۖ إِنِّى لَكُم مِّنْهُ نَذِيرٌ مُّبِينٌ ﴿٥١﴾

52. ಈ ರೀತಿ ಇವರಿಗಿಂತ ಮೊದಲಿನವರ ಬಳಿಗೆ ಸಂದೇಶವಾಹಕರು ಬಂದಾಗಲೆಲ್ಲಾ ಅವರು ಅವರನ್ನು ಮಾಟಗಾರ ಅಥವಾ ಮಾನಸಿಕ ಅಸ್ವಸ್ಥ ಎಂದೇ ಹೇಳುತ್ತಿದ್ದರು.

كَذَٰلِكَ مَآ أَتَى ٱلَّذِينَ مِن قَبْلِهِم مِّن رَّسُولٍ إِلَّا قَالُواْ سَاحِرٌ أَوْ مَجْنُونٌ ﴿٥٢﴾

53. ಇವರು ಈ ಮಾತನ್ನು ಪರಸ್ಪರ ಉಪದೇಶ ಮಾಡಿದ್ದಾರೆಯೇ? ಅಲ್ಲ, ವಾಸ್ತವವಾಗಿ ಅವರು ಅತಿರೇಕಿಗಳಾದ ಜನರಾಗಿದ್ದಾರೆ.

أَتَوَاصَوْاْ بِهِۦ ۚ بَلْ هُمْ قَوْمٌ طَاغُونَ ﴿٥٣﴾

54. ಆದ್ದರಿಂದ ನೀವು ಅವರನ್ನು ಬಿಟ್ಟು ವಿಮುಖರಾಗಿರಿ. ನಿಮ್ಮ ಮೇಲೆ ಯಾವುದೇ ಆಕ್ಷೇಪವಿಲ್ಲ.

فَتَوَلَّ عَنْهُمْ فَمَآ أَنتَ بِمَلُومٍ ﴿٥٤﴾

| | | |
|---|---|---|
| 55. | ನೀವು ಉಪದೇಶ ಮಾಡಿರಿ. ನಿಶ್ಚಯವಾಗಿಯೂ ಉಪದೇಶವು ಸತ್ಯವಿಶ್ವಾಸಿಗಳಿಗೆ ಪ್ರಯೋಜನ ನೀಡುತ್ತದೆ. | وَذَكِّرۡ فَإِنَّ ٱلذِّكۡرَىٰ تَنفَعُ ٱلۡمُؤۡمِنِينَ ۝٥٥ |
| 56. | ನಾನು ಜಿನ್ನ್‌ಗಳನ್ನು ಮತ್ತು ಮನುಷ್ಯರನ್ನು ಸೃಷ್ಟಿಸಿದ್ದು ನನ್ನನ್ನು ಆರಾಧಿಸುವುದಕ್ಕಾಗಿ ಮಾತ್ರ. | وَمَا خَلَقۡتُ ٱلۡجِنَّ وَٱلۡإِنسَ إِلَّا لِيَعۡبُدُونِ ۝٥٦ |
| 57. | ನಾನು ಅವರಿಂದ ಯಾವುದೇ ಉಪಜೀವನವನ್ನು ಬಯಸುವುದಿಲ್ಲ. ಅವರು ನನಗೆ ಆಹಾರ ನೀಡಬೇಕೆಂದೂ ನಾನು ಬಯಸುವುದಿಲ್ಲ. | مَآ أُرِيدُ مِنۡهُم مِّن رِّزۡقٖ وَمَآ أُرِيدُ أَن يُطۡعِمُونِ ۝٥٧ |
| 58. | ನಿಶ್ಚಯವಾಗಿಯೂ ಅಲ್ಲಾಹನೇ ಎಲ್ಲರಿಗೂ ಉಪಜೀವನ ನೀಡುವವನು. ಅವನು ಮಹಾಶಕ್ತಿಶಾಲಿ ಮತ್ತು ಬಲಿಷ್ಠನಾಗಿದ್ದಾನೆ. | إِنَّ ٱللَّهَ هُوَ ٱلرَّزَّاقُ ذُو ٱلۡقُوَّةِ ٱلۡمَتِينُ ۝٥٨ |
| 59. | ಅಕ್ರಮವೆಸಗಿದವರಿಗೆ ಅವರ ಸಂಗಡಿಗರಿಗೆ ದೊರೆತ (ಶಿಕ್ಷೆಯ) ಪಾಲಿನಂತೆಯೇ ಒಂದು ಪಾಲು ದೊರೆಯಲಿದೆ. ಆದ್ದರಿಂದ ಅವರು ನನ್ನೊಡನೆ ತ್ವರೆ ಮಾಡದಿರಲಿ. | فَإِنَّ لِلَّذِينَ ظَلَمُواْ ذَنُوبٗا مِّثۡلَ ذَنُوبِ أَصۡحَٰبِهِمۡ فَلَا يَسۡتَعۡجِلُونِ ۝٥٩ |
| 60. | ಅವರಿಗೆ ವಾಗ್ದಾನ ಮಾಡಲಾದ ಆ ದಿನದ ಕಾರಣದಿಂದ ಸತ್ಯನಿಷೇಧಿಗಳಿಗೆ ವಿನಾಶವಿದೆ. | فَوَيۡلٞ لِّلَّذِينَ كَفَرُواْ مِن يَوۡمِهِمُ ٱلَّذِي يُوعَدُونَ ۝٦٠ |

# 52. ಅತ್ತೂರ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ತೂರ್ ಪರ್ವತದ ಮೇಲಾಣೆ! | وَٱلطُّورِ ۝١ |
| 2. | ಲಿಖಿತಗೊಳಿಸಿದ ಗ್ರಂಥದ ಮೇಲಾಣೆ! | وَكِتَٰبٖ مَّسۡطُورٖ ۝٢ |
| 3. | ತೆರೆದಿಟ್ಟ ತೊಗಲಿನ ಹಾಳೆಗಳಲ್ಲಿ. | فِي رَقّٖ مَّنشُورٖ ۝٣ |
| 4. | ಬೈತುಲ್ ಮಅಮೂರ್‌ನ ಮೇಲಾಣೆ![1] | وَٱلۡبَيۡتِ ٱلۡمَعۡمُورِ ۝٤ |
| 5. | ಎತ್ತರದ ಛಾವಣಿಯ (ಆಕಾಶದ) ಮೇಲಾಣೆ! | وَٱلسَّقۡفِ ٱلۡمَرۡفُوعِ ۝٥ |
| 6. | ಹೊತ್ತಿ ಉರಿಸಲಾದ ಸಮುದ್ರದ ಮೇಲಾಣೆ! | وَٱلۡبَحۡرِ ٱلۡمَسۡجُورِ ۝٦ |
| 7. | ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನ (ಅಲ್ಲಾಹನ) ಶಿಕ್ಷೆಯು | إِنَّ عَذَابَ رَبِّكَ لَوَٰقِعٞ ۝٧ |

[1] ಇದು ಏಳನೇ ಆಕಾಶದಲ್ಲಿರುವ ಆರಾಧನಾಲಯವಾಗಿದ್ದು ದೇವದೂತರುಗಳು ಇಲ್ಲಿ ಆರಾಧನೆ ಮಾಡುತ್ತಾರೆ. ಇದು ದೇವದೂತರುಗಳಿಂದ ತುಂಬಿ ತುಳುಕುತ್ತಿರುತ್ತದೆ. ದಿನನಿತ್ಯ ಎಪ್ಪತ್ತು ಸಾವಿರ ದೇವದೂತರು ಇಲ್ಲಿಗೆ ಭೇಟಿ ನೀಡಿ ಆರಾಧನೆ ಮಾಡುತ್ತಾರೆ. ಇದರ ವಿಶೇಷತೆ ಏನೆಂದರೆ, ಒಮ್ಮೆ ಇಲ್ಲಿ ಆರಾಧನೆ ಮಾಡಿದ ದೇವದೂತರು ಪುನಃ ಇಲ್ಲಿಗೆ ಆರಾಧನೆ ಮಾಡಲು ಬರುವುದಿಲ್ಲ.

ಸಂಭವಿಸಿಯೇ ತೀರುತ್ತದೆ.

| | | |
|---|---|---|
| 8. | ಅದನ್ನು ತಡೆಯುವವರು ಯಾರೂ ಇಲ್ಲ. | مَّا لَهُۥ مِن دَافِعٖ ٨ |
| 9. | ಆಕಾಶವು ಪ್ರಬಲವಾಗಿ ಓಲಾಡುವ ದಿನ. | يَوۡمَ تَمُورُ ٱلسَّمَآءُ مَوۡرٗا ٩ |
| 10. | ಪರ್ವತಗಳು ಚಲಿಸತೊಡಗುವ ದಿನ. | وَتَسِيرُ ٱلۡجِبَالُ سَيۡرٗا ١٠ |
| 11. | ಅಂದು ಸತ್ಯನಿಷೇಧಿಗಳಿಗೆ ವಿನಾಶವಿದೆ. | فَوَيۡلٞ يَوۡمَئِذٖ لِّلۡمُكَذِّبِينَ ١١ |
| 12. | ಅವರು ಯಾರೆಂದರೆ, ವ್ಯರ್ಥ ಮಾತುಗಳಲ್ಲಿ ಮಗ್ನವಾಗಿ ಆಟವಾಡುವವರು. | ٱلَّذِينَ هُمۡ فِي خَوۡضٖ يَلۡعَبُونَ ١٢ |
| 13. | ಅವರನ್ನು ಬಲವಾಗಿ ನರಕಾಗ್ನಿಗೆ ತಳ್ಳಲಾಗುವ ದಿನ! | يَوۡمَ يُدَعُّونَ إِلَىٰ نَارِ جَهَنَّمَ دَعًّا ١٣ |
| 14. | (ಅವರೊಂದಿಗೆ ಹೇಳಲಾಗುವುದು): “ಇದೇ ನೀವು ನಿಷೇಧಿಸುತ್ತಿದ್ದ ನರಕ. | هَٰذِهِ ٱلنَّارُ ٱلَّتِي كُنتُم بِهَا تُكَذِّبُونَ ١٤ |
| 15. | ಇದೇನು ಮಾಟಗಾರಿಕೆಯೇ? ಅಥವಾ ನಿಮಗೆ ನೋಡಲು ಸಾಧ್ಯವಾಗುವುದಿಲ್ಲವೇ? | أَفَسِحۡرٌ هَٰذَآ أَمۡ أَنتُمۡ لَا تُبۡصِرُونَ ١٥ |
| 16. | ಅದನ್ನು ಪ್ರವೇಶಿಸಿರಿ. ಅದರಲ್ಲಿ ನೀವು ತಾಳ್ಮೆಯಿಂದಿದ್ದರೂ ಅಥವಾ ತಾಳ್ಮೆಗೆಟ್ಟರೂ ಪರಿಣಾಮ ಒಂದೇ. ನೀವು ಮಾಡಿದ ಕರ್ಮಗಳಿಗಾಗಿ ಮಾತ್ರ ನಿಮಗೆ ಪ್ರತಿಫಲ ನೀಡಲಾಗುವುದು.” | ٱصۡلَوۡهَا فَٱصۡبِرُوٓاْ أَوۡ لَا تَصۡبِرُواْ سَوَآءٌ عَلَيۡكُمۡۖ إِنَّمَا تُجۡزَوۡنَ مَا كُنتُمۡ تَعۡمَلُونَ ١٦ |
| 17. | ನಿಶ್ಚಯವಾಗಿಯೂ ದೇವಭಯವುಳ್ಳವರು ಸ್ವರ್ಗೋದ್ಯಾನಗಳಲ್ಲಿ ಮತ್ತು ಅನುಗ್ರಹಗಳಲ್ಲಿರುವರು. | إِنَّ ٱلۡمُتَّقِينَ فِي جَنَّٰتٖ وَنَعِيمٖ ١٧ |
| 18. | ಅವರಿಗೆ ಅವರ ಪರಿಪಾಲಕನು (ಅಲ್ಲಾಹು) ನೀಡಿದ್ದರಲ್ಲಿ ಅವರು ಸಂತೋಷವಾಗಿರುವರು. ಅವರ ಪರಿಪಾಲಕನು (ಅಲ್ಲಾಹು) ಅವರನ್ನು ಜ್ವಲಿಸುವ ನರಕ ಶಿಕ್ಷೆಯಿಂದ ಪಾರು ಮಾಡಿದ್ದಾನೆ. | فَٰكِهِينَ بِمَآ ءَاتَىٰهُمۡ رَبُّهُمۡ وَوَقَىٰهُمۡ رَبُّهُمۡ عَذَابَ ٱلۡجَحِيمِ ١٨ |
| 19. | (ಅವರೊಂದಿಗೆ ಹೇಳಲಾಗುವುದು): “ನೀವು ಮಾಡಿದ ಕರ್ಮಗಳ ಪ್ರತಿಫಲವಾಗಿ ನೀವು ಸಂತೃಪ್ತಿಯಿಂದ ತಿನ್ನಿರಿ ಮತ್ತು ಕುಡಿಯಿರಿ.” | كُلُواْ وَٱشۡرَبُواْ هَنِيٓـَٔۢا بِمَا كُنتُمۡ تَعۡمَلُونَ ١٩ |
| 20. | ಅವರು ಸಾಲಾಗಿ ಜೋಡಿಸಿ ಮಂಚಗಳಲ್ಲಿ ಒರಗಿ ಕುಳಿತಿರುವರು. ನಾವು ಅವರಿಗೆ ಅರಳಿದ ಕಣ್ಣುಗಳುಳ್ಳ ಬೆಳ್ಳಗಿನ ತರುಣಿಯರನ್ನು ವಿವಾಹ ಮಾಡಿಕೊಡುವೆವು. | مُتَّكِـِٔينَ عَلَىٰ سُرُرٖ مَّصۡفُوفَةٖۖ وَزَوَّجۡنَٰهُم بِحُورٍ عِينٖ ٢٠ |
| 21. | ಸತ್ಯವಿಶ್ವಾಸಿಗಳಾದವರು ಮತ್ತು ಸತ್ಯವಿಶ್ವಾಸದಲ್ಲಿ ಅವರನ್ನು ಹಿಂಬಾಲಿಸಿದ ಅವರ ಮಕ್ಕಳು—ನಾವು ಅವರ ಮಕ್ಕಳನ್ನು ಅವರ ಜೊತೆಗೆ ಸೇರಿಸುವೆವು. ನಾವು ಅವರ ಕರ್ಮಫಲಗಳಲ್ಲಿ | وَٱلَّذِينَ ءَامَنُواْ وَٱتَّبَعَتۡهُمۡ ذُرِّيَّتُهُم بِإِيمَٰنٍ أَلۡحَقۡنَا بِهِمۡ ذُرِّيَّتَهُمۡ وَمَآ أَلَتۡنَٰهُم مِّنۡ عَمَلِهِم |

ಏನೂ ಕಡಿಮೆ ಮಾಡುವುದಿಲ್ಲ. ಪ್ರತಿಯೊಬ್ಬ ವ್ಯಕ್ತಿಯೂ ಅವನು ಮಾಡಿದ ಕರ್ಮಗಳಿಗೆ ಅಡಮಾನವಾಗಿದ್ದಾನೆ.

مِّن شَيۡءٖۚ كُلُّ ٱمۡرِيِٕۭ بِمَا كَسَبَ رَهِينٞ ٢١

22. ನಾವು ಅವರಿಗೆ ಹಣ್ಣು-ಹಂಪಲುಗಳನ್ನು ಮತ್ತು ಅವರು ಬಯಸುವ ಮಾಂಸವನ್ನು ಯಥೇಷ್ಟವಾಗಿ ನೀಡುವೆವು.

وَأَمۡدَدۡنَٰهُم بِفَٰكِهَةٖ وَلَحۡمٖ مِّمَّا يَشۡتَهُونَ ٢٢

23. ಅವರು ಪರಸ್ಪರ (ಸಂತೋಷದಿಂದ) ಒಬ್ಬರು ಇನ್ನೊಬ್ಬರ (ಶರಾಬಿನ) ಲೋಟವನ್ನು ಕಸಿಯುವರು. ಆ ಶರಾಬು ಕುಡಿಯುವುದರಿಂದ ವ್ಯರ್ಥ ಮಾತುಗಳಾಗಲಿ, ಅಪರಾಧಕೃತ್ಯಗ-ಳಾಗಲಿ ಉಂಟಾಗುವುದಿಲ್ಲ.

يَتَنَٰزَعُونَ فِيهَا كَأۡسٗا لَّا لَغۡوٞ فِيهَا
وَلَا تَأۡثِيمٞ ٢٣

24. ಅವರ ಸುತ್ತಮುತ್ತಲು ಅವರ ಪರಿಚಾರಕರಾದ ಹುಡುಗರು ಸುತ್ತುತ್ತಿರುವರು. ಅವರು ಜೋಪಾನವಾಗಿ ತೆಗೆದಿಡಲಾದ ಮುತ್ತುಗಳಂತಿರುವರು.

وَيَطُوفُ عَلَيۡهِمۡ غِلۡمَانٞ لَّهُمۡ كَأَنَّهُمۡ لُؤۡلُؤٞ
مَّكۡنُونٞ ٢٤

25. ಅವರು ಪರಸ್ಪರ ಒಬ್ಬರು ಇನ್ನೊಬ್ಬರ ಕಡೆಗೆ ತಿರುಗಿ ಪ್ರಶ್ನಿಸುವರು.

وَأَقۡبَلَ بَعۡضُهُمۡ عَلَىٰ بَعۡضٖ يَتَسَآءَلُونَ ٢٥

26. ಅವರು ಹೇಳುವರು: "ನಿಶ್ಚಯವಾಗಿಯೂ ಇದಕ್ಕೆ ಮೊದಲು ನಾವು ನಮ್ಮ ಕುಟುಂಬದವರೊಡನೆ ಇದ್ದಾಗ ಭಯಪಡುತ್ತಿದ್ದೆವು.

قَالُوٓاْ إِنَّا كُنَّا قَبۡلُ فِيٓ أَهۡلِنَا مُشۡفِقِينَ ٢٦

27. ಅಲ್ಲಾಹು ನಮಗೆ ಬಹಳ ದೊಡ್ಡ ಉಪಕಾರವನ್ನು ಮಾಡಿದನು. ಅವನು ನಮ್ಮನ್ನು ತೀಕ್ಷ್ಣವಾಗಿ ಜ್ವಲಿಸುವ ನರಕ ಶಿಕ್ಷೆಯಿಂದ ಪಾರು ಮಾಡಿದನು.

فَمَنَّ ٱللَّهُ عَلَيۡنَا وَوَقَىٰنَا عَذَابَ ٱلسَّمُومِ ٢٧

28. ನಿಶ್ಚಯವಾಗಿಯೂ ಇದಕ್ಕೆ ಮೊದಲು ನಾವು ಅವನನ್ನು ಕರೆದು ಪ್ರಾರ್ಥಿಸುತ್ತಿದ್ದೆವು. ನಿಶ್ಚಯವಾಗಿಯೂ ಅವನು ಅತ್ಯಂತ ಉಪಕಾರ ಮಾಡುವವನು ಮತ್ತು ದಯೆ ತೋರುವವನಾಗಿದ್ದಾನೆ."

إِنَّا كُنَّا مِن قَبۡلُ نَدۡعُوهُۖ إِنَّهُۥ هُوَ
ٱلۡبَرُّ ٱلرَّحِيمُ ٢٨

29. (ಪ್ರವಾದಿಯವರೇ) ನೀವು ಉಪದೇಶ ನೀಡಿರಿ. ನಿಮ್ಮ ಪರಿಪಾಲಕನ (ಅಲ್ಲಾಹನ) ಅನುಗ್ರಹದಿಂದ ನೀವು ಜ್ಯೋತಿಷಿಯೋ ಮಾನಸಿಕ ಅಸ್ವಸ್ಥರೋ ಅಲ್ಲ.

فَذَكِّرۡ فَمَآ أَنتَ بِنِعۡمَتِ رَبِّكَ بِكَاهِنٖ وَلَا
مَجۡنُونٍ ٢٩

30. "ಇವನೊಬ್ಬ ಕವಿಯಾಗಿದ್ದಾನೆ. ಇವನಿಗೆ ಕೇಡುಗಾಲ (ಸಾವು) ಬರುವುದನ್ನು ನಾವು ಕಾಯುತ್ತಿದ್ದೇವೆ" ಎಂದು ಅವರು (ಸತ್ಯನಿಷೇಧಿಗಳು) ಹೇಳುತ್ತಿದ್ದಾರೆಯೇ?

أَمۡ يَقُولُونَ شَاعِرٞ نَّتَرَبَّصُ بِهِۦ
رَيۡبَ ٱلۡمَنُونِ ٣٠

31. ಹೇಳಿರಿ: "ನೀವು ಕಾಯಿರಿ! ನಿಶ್ಚಯವಾಗಿಯೂ ನಾನೂ ನಿಮ್ಮೊಂದಿಗೆ ಕಾಯುವವರಲ್ಲಿ ಸೇರುವೆನು."

قُلۡ تَرَبَّصُواْ فَإِنِّي مَعَكُم مِّنَ ٱلۡمُتَرَبِّصِينَ ٣١

32. ಅವರ ಮನಸ್ಸು ಅವರಿಗೆ ಇದನ್ನೇ ಕಲಿಸುತ್ತದೆಯೇ? ಅಥವಾ ಅವರು ಅತಿರೇಕಿಗಳಾದ ಜನರಾಗಿದ್ದಾರೆಯೇ?

أَمۡ تَأۡمُرُهُمۡ أَحۡلَٰمُهُم بِهَٰذَآۚ أَمۡ هُمۡ قَوۡمٞ طَاغُونَ ٣٢

33. “ಅವನು ಇದನ್ನು ಸ್ವಯಂ ರಚಿಸಿದ್ದಾನೆ” ಎಂದು ಅವರು ಹೇಳುತ್ತಿದ್ದಾರೆಯೇ? ಅಲ್ಲ, ವಾಸ್ತವವಾಗಿ ಅವರು ವಿಶ್ವಾಸವಿಡುವುದಿಲ್ಲ.

أَمۡ يَقُولُونَ تَقَوَّلَهُۥۚ بَل لَّا يُؤۡمِنُونَ ٣٣

34. ಅವರು ಸತ್ಯವನ್ನೇ ಹೇಳುತ್ತಿದ್ದರೆ ಇದರಂತಿರುವ ಒಂದು ವಚನವನ್ನು ಅವರು ರಚಿಸಿ ತರಲಿ.

فَلۡيَأۡتُواْ بِحَدِيثٖ مِّثۡلِهِۦٓ إِن كَانُواْ صَٰدِقِينَ ٣٤

35. ಅವರು (ಯಾವುದೇ ಸೃಷ್ಟಿಕರ್ತನಿಲ್ಲದೆ) ಸ್ವಯಂ ಅಸ್ತಿತ್ವಕ್ಕೆ ಬಂದರೇ? ಅಥವಾ ಅವರೇ ಅವರ ಸೃಷ್ಟಿಕರ್ತರಾಗಿದ್ದಾರೆಯೇ?

أَمۡ خُلِقُواْ مِنۡ غَيۡرِ شَيۡءٍ أَمۡ هُمُ ٱلۡخَٰلِقُونَ ٣٥

36. ಅವರೇ ಭೂಮ್ಯಾಕಾಶಗಳನ್ನು ಸೃಷ್ಟಿಸಿದರೇ? ಅಲ್ಲ, ವಾಸ್ತವವಾಗಿ ಅವರು ದೃಢವಿಶ್ವಾಸವಿಡುವುದಿಲ್ಲ.

أَمۡ خَلَقُواْ ٱلسَّمَٰوَٰتِ وَٱلۡأَرۡضَۚ بَل لَّا يُوقِنُونَ ٣٦

37. ನಿಮ್ಮ ಪರಿಪಾಲಕನ (ಅಲ್ಲಾಹನ) ಬೊಕ್ಕಸಗಳು ಅವರ ಬಳಿಯಲ್ಲಿವೆಯೇ? ಅಥವಾ ಅವರು (ಆ ಬೊಕ್ಕಸಗಳ) ನಿರ್ವಾಹಕರೇ?

أَمۡ عِندَهُمۡ خَزَآئِنُ رَبِّكَ أَمۡ هُمُ ٱلۡمُصَۜيۡطِرُونَ ٣٧

38. ಅವರ ಬಳಿ ಒಂದು ಏಣಿಯಿದ್ದು ಅವರು ಅದನ್ನು ಏರಿ (ಆಕಾಶದ ಮಾತುಗಳನ್ನು) ಕಿವಿಗೊಟ್ಟು ಕೇಳುತ್ತಾರೆಯೇ? ಹಾಗಿದ್ದರೆ ಅವರಲ್ಲಿ ಕಿವಿಗೊಟ್ಟು ಕೇಳಿದ ವ್ಯಕ್ತಿ ಸ್ಪಷ್ಟ ಆಧಾರವನ್ನು ತರಲಿ.

أَمۡ لَهُمۡ سُلَّمٞ يَسۡتَمِعُونَ فِيهِۖ فَلۡيَأۡتِ مُسۡتَمِعُهُم بِسُلۡطَٰنٖ مُّبِينٍ ٣٨

39. ಅಲ್ಲಾಹನಿಗೆ ಹೆಣ್ಣು ಮಕ್ಕಳು ಮತ್ತು ನಿಮಗೆ ಗಂಡು ಮಕ್ಕಳೇ?

أَمۡ لَهُ ٱلۡبَنَٰتُ وَلَكُمُ ٱلۡبَنُونَ ٣٩

40. ನೀವು ಅವರೊಡನೆ ಪ್ರತಿಫಲವನ್ನು ಕೇಳಿ ಅವರು (ಅದನ್ನು ನೀಡಲು ಸಾಧ್ಯವಾಗದೆ) ಸಾಲದ ಹೊರೆಯನ್ನು ಹೊರುತ್ತಿದ್ದಾರೆಯೇ?

أَمۡ تَسۡـَٔلُهُمۡ أَجۡرٗا فَهُم مِّن مَّغۡرَمٖ مُّثۡقَلُونَ ٤٠

41. ಅವರ ಬಳಿ ಅದೃಶ್ಯ ಜ್ಞಾನವಿದ್ದು ಅವರು ಅದನ್ನು ಬರೆಯುತ್ತಿದ್ದಾರೆಯೇ?

أَمۡ عِندَهُمُ ٱلۡغَيۡبُ فَهُمۡ يَكۡتُبُونَ ٤١

42. ಅವರು ಏನಾದರೂ ಪಿತೂರಿ ಮಾಡಲು ಬಯಸುತ್ತಿದ್ದಾರೆಯೇ? ಆದರೆ ಪಿತೂರಿಗೆ ಬಲಿಯಾಗುವವರು ಸತ್ಯನಿಷೇಧಿಗಳೇ ಆಗಿದ್ದಾರೆ.

أَمۡ يُرِيدُونَ كَيۡدٗاۖ فَٱلَّذِينَ كَفَرُواْ هُمُ ٱلۡمَكِيدُونَ ٤٢

43. ಅವರಿಗೆ ಅಲ್ಲಾಹನ ಹೊರತು ಬೇರೆ ದೇವರಿದ್ದಾನೆಯೇ? ಅವರು ಮಾಡುವ ಸಹಭಾಗಿತ್ವ (ಶಿರ್ಕ್) ದಿಂದ ಅಲ್ಲಾಹು ಎಷ್ಟೋ ಪರಿಶುದ್ಧನಾಗಿದ್ದಾನೆ.

أَمۡ لَهُمۡ إِلَٰهٌ غَيۡرُ ٱللَّهِۚ سُبۡحَٰنَ ٱللَّهِ عَمَّا يُشۡرِكُونَ ٤٣

44. ಅವರು ಆಕಾಶದಿಂದ ಒಂದು ತುಣುಕು ಉದುರುವುದನ್ನು ಕಂಡರೆ, “ಅದು ಪದರ ಪದರವಾಗಿ ಪೇರಿಸಿಟ್ಟ ಮೋಡ” ಎಂದು ಹೇಳುತ್ತಾರೆ.

وَإِن يَرَوۡاْ كِسۡفٗا مِّنَ ٱلسَّمَآءِ سَاقِطٗا يَقُولُواْ سَحَابٞ مَّرۡكُومٞ ﴿٤٤﴾

45. ಆದ್ದರಿಂದ ಅವರನ್ನು ಸ್ಮೃತಿ ತಪ್ಪುವಂತೆ ಮಾಡುವ ಅವರ ಆ ದಿನವನ್ನು ಭೇಟಿಯಾಗುವ ತನಕ ಅವರನ್ನು (ಅವರ ಪಾಡಿಗೆ) ಬಿಟ್ಟುಬಿಡಿ.

فَذَرۡهُمۡ حَتَّىٰ يُلَٰقُواْ يَوۡمَهُمُ ٱلَّذِي فِيهِ يُصۡعَقُونَ ﴿٤٥﴾

46. ಆ ದಿನ ಅವರ ತಂತ್ರಗಾರಿಕೆಗಳು ಅವರಿಗೆ ಉಪಕಾರ ಮಾಡುವುದಿಲ್ಲ. ಅವರಿಗೆ ಸಹಾಯವೂ ದೊರೆಯುವುದಿಲ್ಲ.

يَوۡمَ لَا يُغۡنِي عَنۡهُمۡ كَيۡدُهُمۡ شَيۡـٔٗا وَلَا هُمۡ يُنصَرُونَ ﴿٤٦﴾

47. ನಿಶ್ಚಯವಾಗಿಯೂ ಅಕ್ರಮಿಗಳಿಗೆ ಇದರ ಹೊರತಾಗಿ ಬೇರೆ ಶಿಕ್ಷೆಯೂ ಇದೆ. ಆದರೆ ಅವರಲ್ಲಿ ಹೆಚ್ಚಿನವರು ತಿಳಿಯುವುದಿಲ್ಲ.

وَإِنَّ لِلَّذِينَ ظَلَمُواْ عَذَابٗا دُونَ ذَٰلِكَ وَلَٰكِنَّ أَكۡثَرَهُمۡ لَا يَعۡلَمُونَ ﴿٤٧﴾

48. ನೀವು ನಿಮ್ಮ ಪರಿಪಾಲಕನ (ಅಲ್ಲಾಹನ) ತೀರ್ಮಾನವನ್ನು ತಾಳ್ಮೆಯಿಂದ ಕಾಯಿರಿ. ನಿಶ್ಚಯವಾಗಿಯೂ ನೀವು ನಮ್ಮ ಕಣ್ಣುಗಳ ಮುಂಭಾಗದಲ್ಲಿದ್ದೀರಿ. ನೀವು (ಬೆಳಗ್ಗೆ) ಎದ್ದೇಳುವಾಗ ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಸ್ತುತಿಸುತ್ತಾ ಅವನ ಪರಿಶುದ್ಧತೆಯನ್ನು ಕೊಂಡಾಡಿರಿ.

وَٱصۡبِرۡ لِحُكۡمِ رَبِّكَ فَإِنَّكَ بِأَعۡيُنِنَاۖ وَسَبِّحۡ بِحَمۡدِ رَبِّكَ حِينَ تَقُومُ ﴿٤٨﴾

49. ರಾತ್ರಿಯಲ್ಲೂ ಅವನ ಪರಿಶುದ್ಧತೆಯನ್ನು ಕೊಂಡಾಡಿರಿ. ನಕ್ಷತ್ರಗಳು ಮರೆಯಾಗುವ ಸಮಯದಲ್ಲೂ ಸಹ.

وَمِنَ ٱلَّيۡلِ فَسَبِّحۡهُ وَإِدۡبَٰرَ ٱلنُّجُومِ ﴿٤٩﴾

# 53. ಅನ್ನಜ್ಮ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ನಕ್ಷತ್ರದ ಮೇಲಾಣೆ! ಅದು ಮರೆಯಾಗುವಾಗ.

وَٱلنَّجۡمِ إِذَا هَوَىٰ ﴿١﴾

2. ನಿಮ್ಮ ಸಂಗಡಿಗನು (ಪ್ರವಾದಿ) ದಾರಿತಪ್ಪಿಲ್ಲ, ಅವರು ವಕ್ರ ದಾರಿಯಲ್ಲೂ ಇಲ್ಲ.

مَا ضَلَّ صَاحِبُكُمۡ وَمَا غَوَىٰ ﴿٢﴾

3. ಅವರು ಮನಬಂದಂತೆ ಮಾತನಾಡುವುದಿಲ್ಲ.

وَمَا يَنطِقُ عَنِ ٱلۡهَوَىٰٓ ﴿٣﴾

4. ಅದು ಅವರಿಗೆ ಅವತೀರ್ಣಗೊಳಿಸಲಾದ ದೇವವಾಣಿಯಾಗಿದೆ.

إِنۡ هُوَ إِلَّا وَحۡيٞ يُوحَىٰ ﴿٤﴾

5. ಅವರಿಗೆ ಮಹಾ ಶಕ್ತಿಶಾಲಿಯಾದ ದೇವದೂತರು (ಜಿಬ್ರೀಲ್) ಕಲಿಸಿದ್ದಾರೆ.

عَلَّمَهُۥ شَدِيدُ ٱلۡقُوَىٰ ﴿٥﴾

6. ಅವರು ಅತ್ಯಂತ ಬಲಿಷ್ಠರು. ಅವರು (ತಮ್ಮ ನಿಜರೂಪದಲ್ಲಿ) ನೇರವಾಗಿ ನಿಂತರು.

ذُو مِرَّةٖ فَٱسۡتَوَىٰ ﴿٦﴾

7. ಅವರು ಅತ್ಯುನ್ನತ ದಿಗಂತದಲ್ಲಿದ್ದರು. وَهُوَ بِٱلْأُفُقِ ٱلْأَعْلَىٰ ﴿٧﴾

8. ನಂತರ ಅವರು ಹತ್ತಿರವಾದರು ಮತ್ತು ಇಳಿದು ಬಂದರು. ثُمَّ دَنَا فَتَدَلَّىٰ ﴿٨﴾

9. ಅವರು ಎರಡು ಬಿಲ್ಲುಗಳ ದೂರದಲ್ಲಿ ಅಥವಾ ಅದಕ್ಕಿಂತಲೂ ಹತ್ತಿರವಾದರು. فَكَانَ قَابَ قَوْسَيْنِ أَوْ أَدْنَىٰ ﴿٩﴾

10. ಅವರು ಅಲ್ಲಾಹನ ದಾಸರಿಗೆ (ಪ್ರವಾದಿಗೆ) ದೇವವಾಣಿಯಾಗಿ ತಲುಪಿಸಬೇಕಾದುದನ್ನು ತಲುಪಿಸಿದರು. فَأَوْحَىٰٓ إِلَىٰ عَبْدِهِۦ مَآ أَوْحَىٰ ﴿١٠﴾

11. ಅವರು (ಪ್ರವಾದಿ) ನೋಡಿದ ಆ ನೋಟವನ್ನು ಹೃದಯವು ನಿಷೇಧಿಸಲಿಲ್ಲ. مَا كَذَبَ ٱلْفُؤَادُ مَا رَأَىٰٓ ﴿١١﴾

12. ಅವರು (ಪ್ರವಾದಿ) ನೋಡಿರುವುದರ ವಿಷಯದಲ್ಲಿ ನೀವು ಅವರೊಡನೆ ತರ್ಕಿಸುತ್ತೀರಾ? أَفَتُمَٰرُونَهُۥ عَلَىٰ مَا يَرَىٰ ﴿١٢﴾

13. ಅವರು ಇನ್ನೊಂದು ಬಾರಿಯೂ ಅವರನ್ನು (ಜಿಬ್ರೀಲರನ್ನು) ನೋಡಿದ್ದರು. وَلَقَدْ رَءَاهُ نَزْلَةً أُخْرَىٰ ﴿١٣﴾

14. ಸಿದ್ರತುಲ್ ಮುಂತಹಾದ (ತುತ್ತುತುದಿಯ ಬೋರೆ ಮರದ) ಬಳಿಯಲ್ಲಿ.[1] عِندَ سِدْرَةِ ٱلْمُنتَهَىٰ ﴿١٤﴾

15. ಅದರ ಬಳಿಯಲ್ಲೇ ಜನ್ನತುಲ್ ಮಅವಾ ಇದೆ.[2] عِندَهَا جَنَّةُ ٱلْمَأْوَىٰٓ ﴿١٥﴾

16. ಆ ಬೋರೆ ಮರವನ್ನು ಆವರಿಸಬೇಕಾದುದೆಲ್ಲವೂ ಆವರಿಸಿದಾಗ. إِذْ يَغْشَى ٱلسِّدْرَةَ مَا يَغْشَىٰ ﴿١٦﴾

17. (ಪ್ರವಾದಿಯ) ದೃಷ್ಟಿಯು ತಪ್ಪಿಹೋಗಲಿಲ್ಲ ಮತ್ತು ಎಲ್ಲೆ ಮೀರಲೂ ಇಲ್ಲ.[3] مَا زَاغَ ٱلْبَصَرُ وَمَا طَغَىٰ ﴿١٧﴾

18. ಅವರು ಅವರ ಪರಿಪಾಲಕನ (ಅಲ್ಲಾಹನ) ಮಹಾ ದೃಷ್ಟಾಂತಗಳಲ್ಲಿ ಕೆಲವನ್ನು ನೋಡಿದರು. لَقَدْ رَأَىٰ مِنْ ءَايَٰتِ رَبِّهِ ٱلْكُبْرَىٰٓ ﴿١٨﴾

19. ನೀವು ಲಾತ್ ಮತ್ತು ಉಝ್ಝಾದ ಬಗ್ಗೆ ಆಲೋಚಿಸಿ ನೋಡಿದ್ದೀರಾ? أَفَرَءَيْتُمُ ٱللَّٰتَ وَٱلْعُزَّىٰ ﴿١٩﴾

20. ಇನ್ನೊಂದು ಮೂರನೆಯ (ದೇವರಾದ) ಮನಾತ್ ಬಗ್ಗೆ.[4] وَمَنَوٰةَ ٱلثَّالِثَةَ ٱلْأُخْرَىٰٓ ﴿٢٠﴾

---

[1] ಮಿಅರಾಜ್ ರಾತ್ರಿಯಲ್ಲಿ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಸಿದ್ರದುಲ್ ಮುಂತಹಾದ ಬಳಿ ಜಿಬ್ರೀಲರನ್ನು (ಅವರ ಮೇಲೆ ಶಾಂತಿಯಿರಲಿ) ನಿಜರೂಪದಲ್ಲಿ ನೋಡಿದ್ದರು. ಸಿದ್ರತುಲ್ ಮುಂತಹಾ ಎಂದರೆ ಏಳನೇ ಆಕಾಶದಲ್ಲಿರುವ ಬೋರೆ ಮರ. ಇದು ಆಕಾಶದ ಕೊನೆಯ ಗಡಿಯಾಗಿದೆ. ಇದರ ಆಚೆಗೆ ದೇವದೂತರುಗಳಿಗೆ ಪ್ರವೇಶವಿಲ್ಲ.

[2] ಜನ್ನತುಲ್ ಮಅವಾ ಎಂದರೆ ವಾಸ್ತವ್ಯದ ಸ್ವರ್ಗ. ಇದನ್ನು ಹೀಗೆ ಕರೆಯಲು ಕಾರಣವೇನೆಂದರೆ ಆದಮ್ (ಅವರ ಮೇಲೆ ಶಾಂತಿಯಿರಲಿ) ಇಲ್ಲಿ ವಾಸವಾಗಿದ್ದರು.

[3] ಅಂದರೆ ಪ್ರವಾದಿಯ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ದೃಷ್ಟಿಯು ಅತ್ತಿತ್ತ ಚಲಿಸುವುದಾಗಲಿ, ಅವರಿಗೆ ನೋಡಲು ಅನುಮತಿಯಿಲ್ಲದ್ದನ್ನು ನೋಡುವುದಾಗಲಿ ಮಾಡಲಿಲ್ಲ ಎಂದರ್ಥ.

[4] ಲಾತ್ ಒಬ್ಬ ನೀತಿವಂತನಾಗಿದ್ದ. ಈತ ಹಜ್ಜ್‌ಗೆ ಬರುವ ಜನರಿಗೆ ಪಾಯಸ ಬಡಿಸುತ್ತಿದ್ದ. ಈತ ಸತ್ತಾಗ ಜನರು ಅವನ ಸಮಾಧಿಯನ್ನು

21. ನಿಮಗೆ ಗಂಡು ಮಕ್ಕಳು ಮತ್ತು ಅಲ್ಲಾಹನಿಗೆ ಹೆಣ್ಣು ಮಕ್ಕಳೇ?
أَلَكُمُ ٱلذَّكَرُ وَلَهُ ٱلْأُنثَىٰ ﴿٢١﴾

22. ಇದು ಬಹುದೊಡ್ಡ ಅನ್ಯಾಯದ ಹಂಚಿಕೆಯಾಗಿದೆ!
تِلْكَ إِذًا قِسْمَةٌ ضِيزَىٰٓ ﴿٢٢﴾

23. ಇವೆಲ್ಲವೂ ನೀವು ಮತ್ತು ನಿಮ್ಮ ಪೂರ್ವಜರು ನಾಮಕರಣ ಮಾಡಿದ ಕೆಲವು (ವಿಗ್ರಹಗಳ) ಹೆಸರುಗಳಲ್ಲದೆ ಇನ್ನೇನೂ ಅಲ್ಲ. ಅವುಗಳ ಬಗ್ಗೆ ಅಲ್ಲಾಹು ಯಾವುದೇ ಸಾಕ್ಷ್ಯಾಧಾರ-ವನ್ನು ಇಳಿಸಿಕೊಟ್ಟಿಲ್ಲ. ಅವರು ಕೇವಲ ಊಹೆಯನ್ನು ಮತ್ತು ಅವರ ಮನಸ್ಸು ಬಯಸುವುದನ್ನು ಮಾತ್ರ ಹಿಂಬಾಲಿಸುತ್ತಿದ್ದಾರೆ. ಅವರ ಬಳಿಗೆ ಅವರ ಪರಿಪಾಲಕನ (ಅಲ್ಲಾಹನ) ಕಡೆಯಿಂದ ಸನ್ಮಾರ್ಗವು ಬಂದುಬಿಟ್ಟಿದೆ.
إِنْ هِىَ إِلَّآ أَسْمَآءٌ سَمَّيْتُمُوهَآ أَنتُمْ وَءَابَآؤُكُم مَّآ أَنزَلَ ٱللَّهُ بِهَا مِن سُلْطَٰنٍ ۚ إِن يَتَّبِعُونَ إِلَّا ٱلظَّنَّ وَمَا تَهْوَى ٱلْأَنفُسُ ۖ وَلَقَدْ جَآءَهُم مِّن رَّبِّهِمُ ٱلْهُدَىٰٓ ﴿٢٣﴾

24. ಮನುಷ್ಯನಿಗೆ ಅವನು ಬಯಸುವುದೆಲ್ಲವೂ ಸಿಗುವುದೇ?[1]
أَمْ لِلْإِنسَٰنِ مَا تَمَنَّىٰ ﴿٢٤﴾

25. ಪರಲೋಕ ಮತ್ತು ಇಹಲೋಕವು ಅಲ್ಲಾಹನ ವಶದಲ್ಲಿವೆ.
فَلِلَّهِ ٱلْءَاخِرَةُ وَٱلْأُولَىٰ ﴿٢٥﴾

26. ಆಕಾಶಗಳಲ್ಲಿ ಎಷ್ಟು ದೇವದೂತರುಗಳಿದ್ದಾರೆ. ಅಲ್ಲಾಹು ಅವನು ಇಚ್ಛಿಸುವವರಿಗೆ ಮತ್ತು ಅವನ ಪ್ರೀತಿಗೆ ಪಾತ್ರರಾದವರಿಗೆ ಶಿಫಾರಸು ಮಾಡಲು ಅನುಮತಿ ನೀಡಿದವರ ಹೊರತು ಇತರರು ಮಾಡುವ ಶಿಫಾರಸಿನಿಂದ ಯಾವುದೇ ಪ್ರಯೋಜನವಿಲ್ಲ.
وَكَم مِّن مَّلَكٍ فِى ٱلسَّمَٰوَٰتِ لَا تُغْنِى شَفَٰعَتُهُمْ شَيْـًٔا إِلَّا مِنۢ بَعْدِ أَن يَأْذَنَ ٱللَّهُ لِمَن يَشَآءُ وَيَرْضَىٰٓ ﴿٢٦﴾

27. ನಿಶ್ಚಯವಾಗಿಯೂ ಪರಲೋಕದಲ್ಲಿ ವಿಶ್ವಾಸವಿಡದವರು ಯಾರೋ—ಅವರು ದೇವದೂತರುಗಳಿಗೆ ಸ್ತ್ರೀಯರ ಹೆಸರನ್ನಿಡುತ್ತಾರೆ.[2]
إِنَّ ٱلَّذِينَ لَا يُؤْمِنُونَ بِٱلْءَاخِرَةِ لَيُسَمُّونَ ٱلْمَلَٰٓئِكَةَ تَسْمِيَةَ ٱلْأُنثَىٰ ﴿٢٧﴾

28. ಅವರಿಗೆ ಅದರ ಬಗ್ಗೆ ಯಾವುದೇ ಜ್ಞಾನವಿಲ್ಲ. ಅವರು ಕೇವಲ ಊಹೆಯನ್ನು ಮಾತ್ರ ಹಿಂಬಾಲಿಸುತ್ತಾರೆ. ನಿಶ್ಚಯವಾಗಿಯೂ ಸತ್ಯದೆದುರು ಊಹೆಯು ಯಾವುದೇ ಉಪಕಾರ ಮಾಡುವುದಿಲ್ಲ.
وَمَا لَهُم بِهِۦ مِنْ عِلْمٍ ۖ إِن يَتَّبِعُونَ إِلَّا ٱلظَّنَّ ۖ وَإِنَّ ٱلظَّنَّ لَا يُغْنِى مِنَ ٱلْحَقِّ شَيْـًٔا ﴿٢٨﴾

29. ನಮ್ಮ ಸ್ಮರಣೆಯಿಂದ ವಿಮುಖರಾದವರು ಮತ್ತು ಇಹಲೋಕವನ್ನು ಮಾತ್ರ ಬಯಸುವವರು ಯಾರೋ—ಅವರಿಂದ ನೀವು ವಿಮುಖರಾಗಿರಿ.
فَأَعْرِضْ عَن مَّن تَوَلَّىٰ عَن ذِكْرِنَا وَلَمْ يُرِدْ إِلَّا ٱلْحَيَوٰةَ ٱلدُّنْيَا ﴿٢٩﴾

30. ಅದೇ ಅವರ ಜ್ಞಾನದ ಪರಾಕಾಷ್ಠೆ. ತನ್ನ ಮಾರ್ಗದಿಂದ
ذَٰلِكَ مَبْلَغُهُم مِّنَ ٱلْعِلْمِ ۚ إِنَّ رَبَّكَ هُوَ أَعْلَمُ

---

ಆರಾಧಿಸತೊಡಗಿದರು. ನಂತರ ಅವರು ಅವನ ವಿಗ್ರಹವನ್ನು ತಯಾರಿಸಿದರು. ಉಝ್ಝಾ ಎಂದರೆ ಗತ್ಫಾನ್‌ನಲ್ಲಿದ್ದ ಒಂದು ಮರವೆಂದು ಹೇಳಲಾಗುತ್ತದೆ. ಜನರು ಇದನ್ನು ಪೂಜಿಸುತ್ತಿದ್ದರು. ಮನಾತ್ ಎಂದರೆ ಮಕ್ಕಾ ಮತ್ತು ಮದೀನ ನಡುವಿನ ಪ್ರದೇಶದಲ್ಲಿದ್ದ ಒಂದು ವಿಗ್ರಹ. ಜನರು ಈ ವಿಗ್ರಹದ ಕೃಪೆಗೆ ಪಾತ್ರರಾಗಲು ಇದರ ಬಳಿ ಸಹಸ್ರಾರು ಸಂಖ್ಯೆಯಲ್ಲಿ ನೆರೆದು ಜಾನುವಾರುಗಳನ್ನು ಬಲಿ ನೀಡುತ್ತಿದ್ದರು.

[1] ಅಂದರೆ ಅವರು ಆರಾಧಿಸುತ್ತಿರುವ ಆ ದೇವರುಗಳು ಅವರ ಇಚ್ಛೆಗಳನ್ನು ಪೂರೈಸುತ್ತಾರೆ ಮತ್ತು ಅವರಿಗೆ ಶಿಫಾರಸು ಮಾಡುತ್ತಾರೆಂಬ ಅವರ ಬಯಕೆಗಳು ಈಡೇರುವುದಿಲ್ಲ.

[2] ಅರಬ್ ಬಹುದೇವವಿಶ್ವಾಸಿಗಳು ದೇವದೂತರುಗಳನ್ನು ಅಲ್ಲಾಹನ ಹೆಣ್ಣುಮಕ್ಕಳೆಂದು ಕರೆಯುತ್ತಿದ್ದರು.

ತಪ್ಪಿಹೋದವರ ಬಗ್ಗೆ ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ಬಹಳ ಚೆನ್ನಾಗಿ ತಿಳಿದಿದ್ದಾನೆ. ಸನ್ಮಾರ್ಗ ಪಡೆದವರ ಬಗ್ಗೆಯೂ ಅವನು ಬಹಳ ಚೆನ್ನಾಗಿ ತಿಳಿದಿದ್ದಾನೆ.

بِمَن ضَلَّ عَن سَبِيلِهِۦ وَهُوَ أَعۡلَمُ بِمَنِ ٱهۡتَدَىٰ ٣٠

---

31. ಭೂಮ್ಯಾಕಾಶಗಳಲ್ಲಿರುವುದೆಲ್ಲವೂ ಅಲ್ಲಾಹನಿಗೆ ಸೇರಿದ್ದು. ದುಷ್ಕರ್ಮಿಗಳಿಗೆ ಅವರು ಮಾಡಿದ ದುಷ್ಕರ್ಮದ ಪ್ರತಿಫಲವನ್ನು ನೀಡಲು ಮತ್ತು ಸತ್ಕರ್ಮಿಗಳಿಗೆ ಅತ್ಯುತ್ತಮವಾದ ಪ್ರತಿಫಲವನ್ನು ನೀಡಲು.

وَلِلَّهِ مَا فِي ٱلسَّمَٰوَٰتِ وَمَا فِي ٱلۡأَرۡضِ لِيَجۡزِيَ ٱلَّذِينَ أَسَٰٓـُٔواْ بِمَا عَمِلُواْ وَيَجۡزِيَ ٱلَّذِينَ أَحۡسَنُواْ بِٱلۡحُسۡنَى ٣١

---

32. ಅವರು (ಸತ್ಕರ್ಮಿಗಳು) ಯಾರೆಂದರೆ, ಮಹಾಪಾಪಗಳಿಂದ ಮತ್ತು ಅಶ್ಲೀಲಕೃತ್ಯಗಳಿಂದ ದೂರವಿರುವವರು. ಕೆಲವು ಚಿಕ್ಕಪುಟ್ಟ ಪಾಪಗಳ ಹೊರತು. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ವಿಶಾಲವಾಗಿ ಕ್ಷಮಿಸುವವನಾಗಿದ್ದಾನೆ. ಅವನು ನಿಮ್ಮನ್ನು ಭೂಮಿಯಿಂದ ಸೃಷ್ಟಿಸಿದಾಗ ಮತ್ತು ನೀವು ನಿಮ್ಮ ತಾಯಂದಿರ ಉದರಗಳಲ್ಲಿ ಭ್ರೂಣಗಳಾಗಿದ್ದಾಗ ಅವನಿಗೆ ನಿಮ್ಮ ಬಗ್ಗೆ ಬಹಳ ಚೆನ್ನಾಗಿ ತಿಳಿದಿದೆ. ಆದ್ದರಿಂದ ನೀವು ನಿಮ್ಮನ್ನು ಪರಿಶುದ್ಧರೆಂದು ಘೋಷಿಸಬೇಡಿ. ದೇವಭಯವುಳ್ಳವರ ಬಗ್ಗೆ ಅವನಿಗೆ ಬಹಳ ಚೆನ್ನಾಗಿ ತಿಳಿದಿದೆ.

ٱلَّذِينَ يَجۡتَنِبُونَ كَبَٰٓئِرَ ٱلۡإِثۡمِ وَٱلۡفَوَٰحِشَ إِلَّا ٱللَّمَمَۚ إِنَّ رَبَّكَ وَٰسِعُ ٱلۡمَغۡفِرَةِۚ هُوَ أَعۡلَمُ بِكُمۡ إِذۡ أَنشَأَكُم مِّنَ ٱلۡأَرۡضِ وَإِذۡ أَنتُمۡ أَجِنَّةٞ فِي بُطُونِ أُمَّهَٰتِكُمۡۖ فَلَا تُزَكُّوٓاْ أَنفُسَكُمۡۖ هُوَ أَعۡلَمُ بِمَنِ ٱتَّقَىٰٓ ٣٢

---

33. ಮುಖ ತಿರುಗಿಸಿ ಹೋದವನನ್ನು ನೀವು ನೋಡಿದ್ದೀರಾ?

أَفَرَءَيۡتَ ٱلَّذِي تَوَلَّىٰ ٣٣

---

34. ಅವನು ಬಹಳ ಕಡಿಮೆ ಕೊಟ್ಟನು ಮತ್ತು ನಿಲ್ಲಿಸಿದನು.

وَأَعۡطَىٰ قَلِيلٗا وَأَكۡدَىٰٓ ٣٤

---

35. ಅವನ ಬಳಿ ಅದೃಶ್ಯ ಜ್ಞಾನವಿದ್ದು ಅವನು ಅದರ ಮೂಲಕ (ಎಲ್ಲವನ್ನು) ನೋಡುತ್ತಿದ್ದಾನೆಯೇ?

أَعِندَهُۥ عِلۡمُ ٱلۡغَيۡبِ فَهُوَ يَرَىٰٓ ٣٥

---

36. ಮೂಸಾರ ಗ್ರಂಥಗಳಲ್ಲಿರುವುದರ ಬಗ್ಗೆ ಅವನಿಗೆ ತಿಳಿಸಲಾಗಿಲ್ಲವೇ?

أَمۡ لَمۡ يُنَبَّأۡ بِمَا فِي صُحُفِ مُوسَىٰ ٣٦

---

37. (ಕರ್ತವ್ಯಗಳನ್ನು) ನೆರವೇರಿಸಿದ ಇಬ್ರಾಹೀಮರ ಗ್ರಂಥಗಳಲ್ಲಿರುವುದನ್ನು.

وَإِبۡرَٰهِيمَ ٱلَّذِي وَفَّىٰٓ ٣٧

---

38. ಪಾಪಭಾರವನ್ನು ಹೊರುವ ಯಾರೂ ಇನ್ನೊಬ್ಬರ ಪಾಪಭಾರವನ್ನು ಹೊರುವುದಿಲ್ಲವೆಂದು,

أَلَّا تَزِرُ وَازِرَةٞ وِزۡرَ أُخۡرَىٰ ٣٨

---

39. ಮನುಷ್ಯನಿಗೆ ಅವನು ಮಾಡುವ ಪರಿಶ್ರಮಗಳಲ್ಲದೆ ಬೇರೇನೂ ಇಲ್ಲವೆಂದು,

وَأَن لَّيۡسَ لِلۡإِنسَٰنِ إِلَّا مَا سَعَىٰ ٣٩

---

40. ಅವನ ಪರಿಶ್ರಮವನ್ನು ಸದ್ಯವೇ ಅವನಿಗೆ ತೋರಿಸಲಾಗುವುದೆಂದು,

وَأَنَّ سَعۡيَهُۥ سَوۡفَ يُرَىٰ ٤٠

| | | |
|---|---|---|
| 41. | ನಂತರ ಅವನಿಗೆ ಪೂರ್ಣರೂಪದಲ್ಲಿ ಪ್ರತಿಫಲ ನೀಡಲಾಗುವುದೆಂದು, | ثُمَّ يُجۡزَىٰهُ ٱلۡجَزَآءَ ٱلۡأَوۡفَىٰ ﴿٤١﴾ |
| 42. | ನಿಮ್ಮ ಪರಿಪಾಲಕನ (ಅಲ್ಲಾಹನ) ಬಳಿಗೇ ತಲುಪಬೇಕೆಂದು, | وَأَنَّ إِلَىٰ رَبِّكَ ٱلۡمُنتَهَىٰ ﴿٤٢﴾ |
| 43. | ಅವನೇ ನಗುವಂತೆ ಮತ್ತು ಅಳುವಂತೆ ಮಾಡುವವನೆಂದು, | وَأَنَّهُۥ هُوَ أَضۡحَكَ وَأَبۡكَىٰ ﴿٤٣﴾ |
| 44. | ಅವನೇ ಮರಣ ಮತ್ತು ಜೀವನವನ್ನು ನೀಡುವವನೆಂದು, | وَأَنَّهُۥ هُوَ أَمَاتَ وَأَحۡيَا ﴿٤٤﴾ |
| 45. | ಅವನೇ ಗಂಡು-ಹೆಣ್ಣುಗಳೆಂಬ ಜೋಡಿಯನ್ನು ಸೃಷ್ಟಿಸಿದವನೆಂದು, | وَأَنَّهُۥ خَلَقَ ٱلزَّوۡجَيۡنِ ٱلذَّكَرَ وَٱلۡأُنثَىٰ ﴿٤٥﴾ |
| 46. | ವೀರ್ಯದಿಂದ—ಅದನ್ನು ಸ್ಖಲಿಸಲಾದಾಗ. | مِن نُّطۡفَةٍ إِذَا تُمۡنَىٰ ﴿٤٦﴾ |
| 47. | ಎರಡನೆಯ ಬಾರಿ ಜೀವ ನೀಡುವುದು ಅವನ ಹೊಣೆಗಾರಿಕೆಯೆಂದು, | وَأَنَّ عَلَيۡهِ ٱلنَّشۡأَةَ ٱلۡأُخۡرَىٰ ﴿٤٧﴾ |
| 48. | ಅವನೇ ಐಶ್ವರ್ಯ ಮತ್ತು ಸಂತೃಪ್ತತೆಯನ್ನು ನೀಡುವವನೆಂದು, | وَأَنَّهُۥ هُوَ أَغۡنَىٰ وَأَقۡنَىٰ ﴿٤٨﴾ |
| 49. | ಅವನೇ ಶಿಅರಾ[1] ನಕ್ಷತ್ರದ ಒಡೆಯನೆಂದು, | وَأَنَّهُۥ هُوَ رَبُّ ٱلشِّعۡرَىٰ ﴿٤٩﴾ |
| 50. | ಅವನೇ ಪ್ರಾಚೀನ ಆದ್ ಗೋತ್ರವನ್ನು ನಾಶ ಮಾಡಿದವನೆಂದು, | وَأَنَّهُۥٓ أَهۡلَكَ عَادًا ٱلۡأُولَىٰ ﴿٥٠﴾ |
| 51. | ಮತ್ತು ಸಮೂದ್ ಗೋತ್ರವನ್ನು. ಅವನು ಅವರಲ್ಲಿ ಒಬ್ಬನನ್ನೂ ಬಾಕಿಯುಳಿಸಲಿಲ್ಲ. | وَثَمُودَاْ فَمَآ أَبۡقَىٰ ﴿٥١﴾ |
| 52. | ಅದಕ್ಕಿಂತ ಮೊದಲು ನೂಹರ ಜನರನ್ನು. ನಿಶ್ಚಯವಾಗಿಯೂ ಅವರು ಮಹಾ ಅಕ್ರಮಿಗಳು ಮತ್ತು ಅತಿರೇಕಿಗಳಾಗಿದ್ದರು. | وَقَوۡمَ نُوحٖ مِّن قَبۡلُۖ إِنَّهُمۡ كَانُواْ هُمۡ أَظۡلَمَ وَأَطۡغَىٰ ﴿٥٢﴾ |
| 53. | ಮತ್ತು ಬುಡಮೇಲಾದ ದೇಶವನ್ನು.[2] ಅವನು ಅದನ್ನು ಬುಡಮೇಲುಗೊಳಿಸಿದನು. | وَٱلۡمُؤۡتَفِكَةَ أَهۡوَىٰ ﴿٥٣﴾ |
| 54. | ನಂತರ ಅದನ್ನು ಆವರಿಸಬೇಕಾದುದೆಲ್ಲವೂ ಆವರಿಸುವಂತೆ ಮಾಡಿದನು. | فَغَشَّىٰهَا مَا غَشَّىٰ ﴿٥٤﴾ |
| 55. | ಆದ್ದರಿಂದ (ಓ ಮಾನವನೇ), ನೀನು ನಿನ್ನ ಪರಿಪಾಲಕನ (ಅಲ್ಲಾಹನ) ಅನುಗ್ರಹಗಳಲ್ಲಿ ಯಾವುದರ ಬಗ್ಗೆ ಸಂಶಯಪಡುವೆ? | فَبِأَيِّ ءَالَآءِ رَبِّكَ تَتَمَارَىٰ ﴿٥٥﴾ |
| 56. | ಇವರು (ಪ್ರವಾದಿ) ಪೂರ್ವಿಕ ಮುನ್ನೆಚ್ಚರಿಕೆಗಾರರಲ್ಲಿ (ಪ್ರವಾದಿಗಳಲ್ಲಿ) ಸೇರಿದ ಒಬ್ಬ ಮುನ್ನೆಚ್ಚರಿಕೆಗಾರರಾಗಿದ್ದಾರೆ. | هَٰذَا نَذِيرٞ مِّنَ ٱلنُّذُرِ ٱلۡأُولَىٰٓ ﴿٥٦﴾ |

[1] ಶಿಅರಾ (Sirius) ಎಂದರೆ ಲುಬ್ಧಕ ನಕ್ಷತ್ರ. ಅರಬ್ ಬಹುದೇವಾರಾಧಕರಲ್ಲಿ ಕೆಲವರು ಇದನ್ನು ಆರಾಧಿಸುತ್ತಿದ್ದರು.

[2] ಅಂದರೆ ಲೂತ್ (ಅವರ ಮೇಲೆ ಶಾಂತಿಯಿರಲಿ) ವಾಸವಾಗಿದ್ದ ಸದೂಮ್ (Sodom) ದೇಶ.

57. ಹತ್ತಿರವಾಗುವ ಆ ಸಮಯವು (ಪುನರುತ್ಥಾನ ದಿನ) ಹತ್ತಿರವಾಗಿದೆ.
أَزِفَتِ ٱلۡأٓزِفَةُ ﴿٥٧﴾

58. ಅದನ್ನು (ಅದರ ನಿಶ್ಚಿತ ಸಮಯದಲ್ಲಿ) ಅಲ್ಲಾಹನ ಹೊರತು ಯಾರೂ ತೋರಿಸುವವರಿಲ್ಲ.
لَيۡسَ لَهَا مِن دُونِ ٱللَّهِ كَاشِفَةٌ ﴿٥٨﴾

59. ಹಾಗಾದರೆ ಈ ಸಮಾಚಾರದಿಂದ ನಿಮಗೆ ಅಚ್ಚರಿಯಾಗುತ್ತಿದೆಯೇ?
أَفَمِنۡ هَٰذَا ٱلۡحَدِيثِ تَعۡجَبُونَ ﴿٥٩﴾

60. ನೀವು ನಗುತ್ತಿದ್ದೀರಿ. ನೀವು ಅಳುತ್ತಿಲ್ಲ.
وَتَضۡحَكُونَ وَلَا تَبۡكُونَ ﴿٦٠﴾

61. ನೀವು ಆಟವಾಡುತ್ತಿದ್ದೀರಿ.
وَأَنتُمۡ سَٰمِدُونَ ﴿٦١﴾

62. ನೀವು ಅಲ್ಲಾಹನಿಗೆ ಸಾಷ್ಟಾಂಗ ಮಾಡಿರಿ ಮತ್ತು ಅವನನ್ನು ಆರಾಧಿಸಿರಿ.
فَٱسۡجُدُواْۤ لِلَّهِۤ وَٱعۡبُدُواْ۩ ﴿٦٢﴾

## 54. ಅಲ್-ಕಮರ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ
بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಅಂತ್ಯಸಮಯವು ಹತ್ತಿರವಾಗಿದೆ ಮತ್ತು ಚಂದ್ರ ಇಬ್ಭಾಗವಾಗಿದೆ.[1]
ٱقۡتَرَبَتِ ٱلسَّاعَةُ وَٱنشَقَّ ٱلۡقَمَرُ ﴿١﴾

2. ಅವರು ಯಾವುದೇ ದೃಷ್ಟಾಂತವನ್ನು ನೋಡಿದರೂ ವಿಮುಖರಾಗುತ್ತಾರೆ ಮತ್ತು “ಇದು ಹಿಂದಿನಿಂದಲೇ ನಡೆದು ಬರುತ್ತಿರುವ ಮಾಟಗಾರಿಕೆ” ಎಂದು ಹೇಳುತ್ತಾರೆ.
وَإِن يَرَوۡاْ ءَايَةٗ يُعۡرِضُواْ وَيَقُولُواْ سِحۡرٞ مُّسۡتَمِرّٞ ﴿٢﴾

3. ಅವರು ನಿಷೇಧಿಸಿದರು ಮತ್ತು ತಮ್ಮ ಸ್ವೇಚ್ಛೆಗಳನ್ನು ಹಿಂಬಾಲಿಸಿದರು. ಎಲ್ಲಾ ವಿಷಯಗಳಿಗೂ ಒಂದು ನಿಶ್ಚಿತ ಸಮಯವನ್ನು ನಿರ್ಣಯಿಸಲಾಗಿದೆ.
وَكَذَّبُواْ وَٱتَّبَعُوٓاْ أَهۡوَآءَهُمۡۚ وَكُلُّ أَمۡرٖ مُّسۡتَقِرّٞ ﴿٣﴾

4. ನಿಶ್ಚಯವಾಗಿಯೂ ಅವರ ಬಳಿಗೆ ಗದರಿಕೆಯ (ಉಪದೇಶವಿರುವ) ಸಮಾಚಾರಗಳು ಬಂದಿವೆ.
وَلَقَدۡ جَآءَهُم مِّنَ ٱلۡأَنۢبَآءِ مَا فِيهِ مُزۡدَجَرٌ ﴿٤﴾

5. ಪೂರ್ಣರೂಪದ ವಿವೇಕಯುಕ್ತ ಮಾತುಗಳು. ಆದರೂ ಆ ಮುನ್ನೆಚ್ಚರಿಕೆಗಳು ಪ್ರಯೋಜನ ನೀಡಲಿಲ್ಲ.
حِكۡمَةُۢ بَٰلِغَةٞۖ فَمَا تُغۡنِ ٱلنُّذُرُ ﴿٥﴾

6. ಆದ್ದರಿಂದ (ಪ್ರವಾದಿಯವರೇ!) ನೀವು ಅವರಿಂದ ವಿಮುಖರಾಗಿ ಬಿಡಿ. ಕರೆ ನೀಡುವವನು ಅನಿಷ್ಟಕರ ವಿಷಯದ ಕಡೆಗೆ ಕರೆ ನೀಡುವ ದಿನ.
فَتَوَلَّ عَنۡهُمۡۘ يَوۡمَ يَدۡعُ ٱلدَّاعِ إِلَىٰ شَيۡءٖ نُّكُرٍ ﴿٦﴾

[1] ಮಕ್ಕಾದ ಸತ್ಯನಿಷೇಧಿಗಳ ಬೇಡಿಕೆಯ ಮೇರೆಗೆ ಈ ಪವಾಡವು ಸಂಭವಿಸಿತ್ತು. ಚಂದ್ರ ಇಬ್ಭಾಗವಾಗಿ ಅದರ ಎರಡು ಭಾಗಗಳನ್ನು ಜನರು ಹಿರಾ ಬೆಟ್ಟದ ಎರಡು ಬದಿಗಳಲ್ಲಿ ಕಂಡರು.

7. ಅವರ ಕಣ್ಣುಗಳು ವಿನಮ್ರವಾಗಿರುವುವು. ದಿಕ್ಕೆಟ್ಟು ಹಾರಾಡುವ ಮಿಡತೆಗಳಂತೆ ಅವರು ಸಮಾಧಿಗಳಿಂದ ಹೊರಬರುವರು.

خُشَّعًا أَبۡصَٰرُهُمۡ يَخۡرُجُونَ مِنَ ٱلۡأَجۡدَاثِ كَأَنَّهُمۡ جَرَادٞ مُّنتَشِرٞ ٧

8. ಅವರು ಕರೆ ನೀಡುವವನ ಕಡೆಗೆ ಆತುರದಿಂದ ಓಡುವರು. ಸತ್ಯನಿಷೇಧಿಗಳು ಹೇಳುವರು: “ಇದು ಕಠೋರ ದಿನವಾಗಿದೆ.”

مُّهۡطِعِينَ إِلَى ٱلدَّاعِۖ يَقُولُ ٱلۡكَٰفِرُونَ هَٰذَا يَوۡمٌ عَسِرٞ ٨

9. ಅವರಿಗಿಂತ ಮೊದಲು ನೂಹರ ಜನರು ನಿಷೇಧಿಸಿದ್ದರು. ಅವರು ನಮ್ಮ ದಾಸನನ್ನು ನಿಷೇಧಿಸಿದರು. ಮಾನಸಿಕ ಅಸ್ವಸ್ಥ ಎಂದು ಜರೆಯುತ್ತಾ ಅವರನ್ನು ಗದರಿಸಿದರು.

كَذَّبَتۡ قَبۡلَهُمۡ قَوۡمُ نُوحٖ فَكَذَّبُواْ عَبۡدَنَا وَقَالُواْ مَجۡنُونٞ وَٱزۡدُجِرَ ٩

10. ಆಗ ನೂಹ್ ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಕರೆದು ಪ್ರಾರ್ಥಿಸಿದರು: “ನಾನು ಅಸಹಾಯಕನಾಗಿದ್ದೇನೆ. ನನಗೆ ಸಹಾಯ ಮಾಡು.”

فَدَعَا رَبَّهُۥٓ أَنِّي مَغۡلُوبٞ فَٱنتَصِرۡ ١٠

11. ಆಗ ರಭಸವಾಗಿ ಸುರಿಯುವ ಮಳೆಗಾಗಿ ನಾವು ಆಕಾಶದ್ವಾರಗಳನ್ನು ತೆರೆದೆವು.

فَفَتَحۡنَآ أَبۡوَٰبَ ٱلسَّمَآءِ بِمَآءٖ مُّنۡهَمِرٖ ١١

12. ನಾವು ಭೂಮಿಯಲ್ಲಿ ಒರತೆಗಳನ್ನು ಚಿಮ್ಮುವಂತೆ ಮಾಡಿದೆವು. ಈಗಾಗಲೇ ನಿರ್ಣಯಿಸಿದ ವಿಷಯಕ್ಕಾಗಿ (ಆಕಾಶ ಮತ್ತು ಭೂಮಿಯ) ನೀರು ಸಂಗಮವಾಯಿತು.

وَفَجَّرۡنَا ٱلۡأَرۡضَ عُيُونٗا فَٱلۡتَقَى ٱلۡمَآءُ عَلَىٰٓ أَمۡرٖ قَدۡ قُدِرَ ١٢

13. ನಾವು ಅವರನ್ನು ಹಲಗೆಗಳು ಮತ್ತು ಮೊಳೆಗಳಿಂದ (ನಿರ್ಮಿಸಿದ ಹಡಗಿನಲ್ಲಿ) ಒಯ್ದೆವು.

وَحَمَلۡنَٰهُ عَلَىٰ ذَاتِ أَلۡوَٰحٖ وَدُسُرٖ ١٣

14. ಅದು ನಮ್ಮ ಕಣ್ಣುಗಳ ಮುಂಭಾಗದಲ್ಲಿ ಚಲಿಸುತ್ತಿತ್ತು. ಯಾರನ್ನು ನಿಷೇಧಿಸಲಾಯಿತೋ ಅವರಿಗೆ (ನೂಹರಿಗೆ) ಪ್ರತಿಫಲವಾಗಿ.

تَجۡرِي بِأَعۡيُنِنَا جَزَآءٗ لِّمَن كَانَ كُفِرَ ١٤

15. ನಿಶ್ಚಯವಾಗಿಯೂ ನಾವು ಆ ಘಟನೆಯನ್ನು ಒಂದು ದೃಷ್ಟಾಂತವಾಗಿ ಉಳಿಸಿದೆವು. ಉಪದೇಶ ಸ್ವೀಕರಿಸುವವರು ಯಾರಾದರೂ ಇದ್ದಾರೆಯೇ?

وَلَقَد تَّرَكۡنَٰهَآ ءَايَةٗ فَهَلۡ مِن مُّدَّكِرٖ ١٥

16. ನನ್ನ ಶಿಕ್ಷೆ ಮತ್ತು ಎಚ್ಚರಿಕೆಯ ಮಾತುಗಳು ಹೇಗಿದ್ದವು (ಎಂದು ಹೇಳಿರಿ).

فَكَيۡفَ كَانَ عَذَابِي وَنُذُرِ ١٦

17. ನಾವು ಕುರ್‌ಆನನ್ನು ಅರ್ಥಮಾಡಿಕೊಳ್ಳುವುದಕ್ಕಾಗಿ ಸರಳಗೊಳಿಸಿದ್ದೇವೆ. ಉಪದೇಶ ಸ್ವೀಕರಿಸುವವರು ಯಾರಾದರೂ ಇದ್ದಾರೆಯೇ?

وَلَقَدۡ يَسَّرۡنَا ٱلۡقُرۡءَانَ لِلذِّكۡرِ فَهَلۡ مِن مُّدَّكِرٖ ١٧

18. ಆದ್ ಗೋತ್ರದವರು ನಿಷೇಧಿಸಿದರು. ಆಗ ನನ್ನ ಶಿಕ್ಷೆ ಮತ್ತು ಎಚ್ಚರಿಕೆಯ ಮಾತುಗಳು ಹೇಗಿದ್ದವು?

كَذَّبَتۡ عَادٞ فَكَيۡفَ كَانَ عَذَابِي وَنُذُرِ ١٨

| | | |
|---|---|---|
| 19. | ನಿಶ್ಚಯವಾಗಿಯೂ ನಾವು ನಿರಂತರವಾಗಿ ಬೀಸುವ ಭೀಕರ ಚಳಿಗಾಳಿಯನ್ನು ಅಶುಭ ದಿನಗಳಲ್ಲಿ ಅವರ ಕಡೆಗೆ ಕಳುಹಿಸಿದೆವು. | إِنَّآ أَرۡسَلۡنَا عَلَيۡهِمۡ رِيحٗا صَرۡصَرٗا فِي يَوۡمِ نَحۡسٖ مُّسۡتَمِرّٖ ١٩ |
| 20. | ಅದು ಮನುಷ್ಯರನ್ನು ಎತ್ತಿ ಎಸೆಯುತ್ತಿತ್ತು. ಅವರು ಬುಡಸಮೇತ ಕೀಳಲಾದ ಖರ್ಜೂರ ಮರದ ಕಾಂಡಗಳೋ ಎಂಬಂತೆ. | تَنزِعُ ٱلنَّاسَ كَأَنَّهُمۡ أَعۡجَازُ نَخۡلٖ مُّنقَعِرٖ ٢٠ |
| 21. | ಆಗ ನನ್ನ ಶಿಕ್ಷೆ ಮತ್ತು ಎಚ್ಚರಿಕೆಯ ಮಾತುಗಳು ಹೇಗಿದ್ದವು? | فَكَيۡفَ كَانَ عَذَابِي وَنُذُرِ ٢١ |
| 22. | ನಾವು ಕುರ್‌ಆನನ್ನು ಅರ್ಥಮಾಡಿಕೊಳ್ಳುವುದಕ್ಕಾಗಿ ಸರಳಗೊ-ಳಿಸಿದ್ದೇವೆ. ಉಪದೇಶ ಸ್ವೀಕರಿಸುವವರು ಯಾರಾದರೂ ಇದ್ದಾರೆಯೇ? | وَلَقَدۡ يَسَّرۡنَا ٱلۡقُرۡءَانَ لِلذِّكۡرِ فَهَلۡ مِن مُّدَّكِرٖ ٢٢ |
| 23. | ಸಮೂದ್ ಗೋತ್ರದವರು ಎಚ್ಚರಿಕೆಗಳನ್ನು ನಿಷೇಧಿಸಿದರು. | كَذَّبَتۡ ثَمُودُ بِٱلنُّذُرِ ٢٣ |
| 24. | ಅವರು ಹೇಳಿದರು: “ನಮ್ಮವರಲ್ಲೇ ಸೇರಿದ ಒಬ್ಬನನ್ನು ನಾವು ಅನುಸರಿಸಬೇಕೇ? ಹಾಗೇನಾದರೂ ಆದರೆ ನಿಶ್ಚಯವಾಗಿಯೂ ನಾವು ಪ್ರಮಾದದಲ್ಲಿ ಬೀಳುವೆವು ಮತ್ತು ಮತಿಯಿಲ್ಲದವರಾಗಿ ಬಿಡುವೆವು. | فَقَالُوٓاْ أَبَشَرٗا مِّنَّا وَٰحِدٗا نَّتَّبِعُهُۥٓ إِنَّآ إِذٗا لَّفِي ضَلَٰلٖ وَسُعُرٍ ٢٤ |
| 25. | ನಮ್ಮ ನಡುವೆ ಅವನಿಗೆ ಮಾತ್ರ ದೇವವಾಣಿ ನೀಡಲಾಗುತ್ತಿದೆಯೇ? ಅಲ್ಲ, ವಾಸ್ತವವಾಗಿ ಅವನು ಸುಳ್ಳುಗಾರ ಮತ್ತು ಅಹಂಭಾವಿಯಾಗಿದ್ದಾನೆ.” | أَءُلۡقِيَ ٱلذِّكۡرُ عَلَيۡهِ مِنۢ بَيۡنِنَا بَلۡ هُوَ كَذَّابٌ أَشِرٞ ٢٥ |
| 26. | ಸುಳ್ಳುಗಾರ ಮತ್ತು ಅಹಂಭಾವಿ ಯಾರೆಂದು ಅವರು ನಾಳೆ ತಿಳಿಯುವರು. | سَيَعۡلَمُونَ غَدٗا مَّنِ ٱلۡكَذَّابُ ٱلۡأَشِرُ ٢٦ |
| 27. | ನಿಶ್ಚಯವಾಗಿಯೂ ನಾವು ಅವರಿಗೆ ಪರೀಕ್ಷೆಯಾಗಿ ಒಂದು ಒಂಟೆಯನ್ನು ಕಳುಹಿಸುವೆವು. (ಓ ಸ್ವಾಲಿಹ್) ನೀವು ಅವರನ್ನು ಗಮನಿಸುತ್ತಿರಿ ಮತ್ತು ತಾಳ್ಮೆಯಿಂದಿರಿ. | إِنَّا مُرۡسِلُواْ ٱلنَّاقَةِ فِتۡنَةٗ لَّهُمۡ فَٱرۡتَقِبۡهُمۡ وَٱصۡطَبِرۡ ٢٧ |
| 28. | ನೀರನ್ನು ಅವರ ಮಧ್ಯೆ (ಅವರಿಗೆ ಮತ್ತು ಒಂಟೆಗೆ) ಪಾಲು ಮಾಡಲಾಗಿದೆಯೆಂದು ಅವರಿಗೆ ತಿಳಿಸಿರಿ. ಪ್ರತಿಯೊಬ್ಬರೂ ತಮ್ಮ ಸರದಿ ಬಂದಾಗ ಉಪಸ್ಥಿತರಾಗಲಿ. | وَنَبِّئۡهُمۡ أَنَّ ٱلۡمَآءَ قِسۡمَةُۢ بَيۡنَهُمۡۖ كُلُّ شِرۡبٖ مُّحۡتَضَرٞ ٢٨ |
| 29. | ಆದರೆ ಅವರು ಅವರ ಗೆಳೆಯನನ್ನು ಕರೆದರು. ಅವನು ಆ ಒಂಟೆಯನ್ನು ಹಿಡಿದು ಅದರ ಕಾಲುಗಳನ್ನು ಕತ್ತರಿಸಿದನು. | فَنَادَوۡاْ صَاحِبَهُمۡ فَتَعَاطَىٰ فَعَقَرَ ٢٩ |
| 30. | ಆಗ ನನ್ನ ಶಿಕ್ಷೆ ಮತ್ತು ಎಚ್ಚರಿಕೆಯ ಮಾತುಗಳು ಹೇಗಿದ್ದವು? | فَكَيۡفَ كَانَ عَذَابِي وَنُذُرِ ٣٠ |
| 31. | ನಾವು ಅವರ ಮೇಲೆ ಒಂದೇ ಚೀತ್ಕಾರವನ್ನು ಕಳುಹಿಸಿದೆವು. ಆಗ ಅವರು ಹಟ್ಟಿ ನಿರ್ಮಿಸುವವನು ಎಸೆದ ಹುಲ್ಲಿನಂತಾಗಿ ಬಿಟ್ಟರು. | إِنَّآ أَرۡسَلۡنَا عَلَيۡهِمۡ صَيۡحَةٗ وَٰحِدَةٗ فَكَانُواْ كَهَشِيمِ ٱلۡمُحۡتَظِرِ ٣١ |

32. ನಾವು ಕುರ್‌ಆನನ್ನು ಅರ್ಥಮಾಡಿಕೊಳ್ಳುವುದಕ್ಕಾಗಿ ಸರಳಗೊ-ಳಿಸಿದ್ದೇವೆ. ಉಪದೇಶ ಸ್ವೀಕರಿಸುವವರು ಯಾರಾದರೂ ಇದ್ದಾರೆಯೇ?

وَلَقَدۡ يَسَّرۡنَا ٱلۡقُرۡءَانَ لِلذِّكۡرِ فَهَلۡ مِن مُّدَّكِرٖ ٣٢

33. ಲೂತರ ಜನರು ಎಚ್ಚರಿಕೆಗಳನ್ನು ನಿಷೇಧಿಸಿದರು.

كَذَّبَتۡ قَوۡمُ لُوطِۭ بِٱلنُّذُرِ ٣٣

34. ನಿಶ್ಚಯವಾಗಿಯೂ ನಾವು ಅವರ ಮೇಲೆ ಕಲ್ಲುಗಳ ಬಿರುಗಾಳಿಯನ್ನು ಕಳುಹಿಸಿದೆವು. ಲೂತರ ಕುಟುಂಬದ ಹೊರತು. ನಾವು ಅವರನ್ನು ಸಹರಿಯ ವೇಳೆಯಲ್ಲಿ (ರಾತ್ರಿಯ ಕೊನೆಯ ಸಮಯ) ರಕ್ಷಿಸಿದೆವು.

إِنَّآ أَرۡسَلۡنَا عَلَيۡهِمۡ حَاصِبًا إِلَّآ ءَالَ لُوطٖۖ نَّجَّيۡنَٰهُم بِسَحَرٖ ٣٤

35. ನಮ್ಮ ಕಡೆಯ ಒಂದು ಉಪಕಾರವಾಗಿ. ಕೃತಜ್ಞರಾಗಿರುವವರಿಗೆ ನಾವು ಈ ರೀತಿ ಪ್ರತಿಫಲವನ್ನು ನೀಡುವೆವು.

نِّعۡمَةٗ مِّنۡ عِندِنَاۚ كَذَٰلِكَ نَجۡزِي مَن شَكَرَ ٣٥

36. ನಮ್ಮ ಹಿಡಿತದ ಬಗ್ಗೆ ಅವರು (ಲೂತ್) ಅವರಿಗೆ ಎಚ್ಚರಿಕೆ ನೀಡಿದ್ದರು. ಆದರೆ ಅವರು ಆ ಎಚ್ಚರಿಕೆಗಳ ಬಗ್ಗೆ ಅನುಮಾನ ವ್ಯಕ್ತಪಡಿಸಿದರು.

وَلَقَدۡ أَنذَرَهُم بَطۡشَتَنَا فَتَمَارَوۡاْ بِٱلنُّذُرِ ٣٦

37. ಅವರು ಲೂತರನ್ನು ಅವರ ಅತಿಥಿಗಳ ವಿಷಯದಲ್ಲಿ ಪುಸಲಾಯಿಸಿದರು. ಆಗ ನಾವು ಅವರ ಕಣ್ಣುಗಳನ್ನು ಕುರುಡಾಗಿಸಿದೆವು. (ನಾವು ಹೇಳಿದೆವು): “ನನ್ನ ಶಿಕ್ಷೆ ಮತ್ತು ಎಚ್ಚರಿಕೆಗಳ ರುಚಿಯನ್ನು ನೋಡಿರಿ.”

وَلَقَدۡ رَٰوَدُوهُ عَن ضَيۡفِهِۦ فَطَمَسۡنَآ أَعۡيُنَهُمۡ فَذُوقُواْ عَذَابِي وَنُذُرِ ٣٧

38. ಮುಂಜಾನೆಯೇ ಅವರನ್ನು ಒಂದೇ ಸ್ಥಳದಲ್ಲಿ ಹಿಡಿದಿಡುವ ಶಿಕ್ಷೆಯು ಅವರ ಮೇಲೆರಗಿಬಿಟ್ಟಿತು.

وَلَقَدۡ صَبَّحَهُم بُكۡرَةً عَذَابٞ مُّسۡتَقِرّٞ ٣٨

39. (ನಾವು ಹೇಳಿದೆವು): “ನನ್ನ ಶಿಕ್ಷೆ ಮತ್ತು ಎಚ್ಚರಿಕೆಗಳ ರುಚಿಯನ್ನು ನೋಡಿರಿ.”

فَذُوقُواْ عَذَابِي وَنُذُرِ ٣٩

40. ನಾವು ಕುರ್‌ಆನನ್ನು ಅರ್ಥಮಾಡಿಕೊಳ್ಳುವುದಕ್ಕಾಗಿ ಸರಳಗೊಳಿಸಿ ದ್ದೇವೆ. ಉಪದೇಶ ಸ್ವೀಕರಿಸುವವರು ಯಾರಾದರೂ ಇದ್ದಾರೆಯೇ?

وَلَقَدۡ يَسَّرۡنَا ٱلۡقُرۡءَانَ لِلذِّكۡرِ فَهَلۡ مِن مُّدَّكِرٖ ٤٠

41. ಫರೋಹನ ಜನರಿಗೂ ಎಚ್ಚರಿಕೆಗಳು ಬಂದಿದ್ದವು.

وَلَقَدۡ جَآءَ ءَالَ فِرۡعَوۡنَ ٱلنُّذُرُ ٤١

42. ಅವರು ನಮ್ಮ ದೃಷ್ಟಾಂತಗಳೆಲ್ಲವನ್ನೂ ನಿಷೇಧಿಸಿದರು. ಆಗ ನಾವು ಮಹಾ ಪ್ರಬಲನು ಮತ್ತು ಶಕ್ತಿವಂತನು ಹಿಡಿಯುವಂತೆ ಅವರನ್ನು ಹಿಡಿದೆವು.

كَذَّبُواْ بِـَٔايَٰتِنَا كُلِّهَا فَأَخَذۡنَٰهُمۡ أَخۡذَ عَزِيزٖ مُّقۡتَدِرٍ ٤٢

43. (ಓ ಕುರೈಶರೇ) ನಿಮ್ಮ ಸತ್ಯನಿಷೇಧಿಗಳು ಇವರಿಗಿಂತ ಒಳ್ಳೆಯವರೇ? ಅಥವಾ ನಿಮಗೆ ಪೂರ್ವ ಗ್ರಂಥಗಳಲ್ಲಿ ವಿನಾಯಿತಿ ನಿಶ್ಚಯಿಸಲಾಗಿದೆಯೇ?

أَكُفَّارُكُمۡ خَيۡرٞ مِّنۡ أُوْلَٰٓئِكُمۡ أَمۡ لَكُم بَرَآءَةٞ فِي ٱلزُّبُرِ ٤٣

| | |
|---|---|
| 44. ಅಥವಾ, "ನಾವು ಗೆಲ್ಲುವ ಸಂಘವಾಗಿದ್ದೇವೆ" ಎಂದು ಅವರು ಹೇಳುತ್ತಿದ್ದಾರೆಯೇ? | أَمۡ يَقُولُونَ نَحۡنُ جَمِيعٞ مُّنتَصِرٞ ﴿٤٤﴾ |
| 45. ಅವರ ಸಂಘವು ಸದ್ಯವೇ ಪರಾಭವಗೊಳ್ಳಲಿದೆ ಮತ್ತು ಅವರು ಬೆನ್ನು ತೋರಿಸಿ ಓಡಲಿದ್ದಾರೆ. | سَيُهۡزَمُ ٱلۡجَمۡعُ وَيُوَلُّونَ ٱلدُّبُرَ ﴿٤٥﴾ |
| 46. ಅಲ್ಲ, ಅಂತ್ಯಸಮಯವು (ಪುನರುತ್ಥಾನ ದಿನವು) ಅವರಿಗೆ ವಾಗ್ದಾನ ಮಾಡಲಾದ ಸಮಯವಾಗಿದೆ. ಅಂತ್ಯಸಮಯವು ಅತ್ಯಂತ ಕಠೋರ ಮತ್ತು ಅತ್ಯಂತ ಕಹಿಯಾಗಿದೆ. | بَلِ ٱلسَّاعَةُ مَوۡعِدُهُمۡ وَٱلسَّاعَةُ أَدۡهَىٰ وَأَمَرُّ ﴿٤٦﴾ |
| 47. ನಿಶ್ಚಯವಾಗಿಯೂ ಅಪರಾಧಿಗಳು ದುರ್ಮಾರ್ಗದಲ್ಲಿ ಮತ್ತು ಶಿಕ್ಷೆಯಲ್ಲಿದ್ದಾರೆ. | إِنَّ ٱلۡمُجۡرِمِينَ فِي ضَلَٰلٖ وَسُعُرٖ ﴿٤٧﴾ |
| 48. ಅವರನ್ನು ಅವರ ಮುಖದ ಮೇಲೆ ನರಕಾಗ್ನಿಯಲ್ಲಿ ಎಳೆದೊಯ್ಯಲಾಗುವ ದಿನ! (ಅವರೊಡನೆ ಹೇಳಲಾಗುವುದು): "ನೀವು ನರಕ ಸ್ಪರ್ಶದ ರುಚಿಯನ್ನು ನೋಡಿರಿ." | يَوۡمَ يُسۡحَبُونَ فِي ٱلنَّارِ عَلَىٰ وُجُوهِهِمۡ ذُوقُواْ مَسَّ سَقَرَ ﴿٤٨﴾ |
| 49. ನಿಶ್ಚಯವಾಗಿಯೂ ನಾವು ಎಲ್ಲಾ ವಸ್ತುಗಳನ್ನು ಒಂದು (ನಿಶ್ಚಿತ) ನಿರ್ಣಯದಂತೆ ಸೃಷ್ಟಿಸಿದ್ದೇವೆ. | إِنَّا كُلَّ شَيۡءٍ خَلَقۡنَٰهُ بِقَدَرٖ ﴿٤٩﴾ |
| 50. ನಮ್ಮ ಆಜ್ಞೆಯು ಕಣ್ಣೆವೆಯಿಕ್ಕುವಂತೆ ಒಂದು ಮಾತು ಮಾತ್ರವಾಗಿದೆ. | وَمَآ أَمۡرُنَآ إِلَّا وَٰحِدَةٞ كَلَمۡحِۭ بِٱلۡبَصَرِ ﴿٥٠﴾ |
| 51. ನಾವು ನಿಮ್ಮಂತಹ ಅನೇಕರನ್ನು ನಾಶ ಮಾಡಿದ್ದೇವೆ. ಉಪದೇಶ ಸ್ವೀಕರಿಸುವವರು ಯಾರಾದರೂ ಇದ್ದಾರೆಯೇ? | وَلَقَدۡ أَهۡلَكۡنَآ أَشۡيَاعَكُمۡ فَهَلۡ مِن مُّدَّكِرٖ ﴿٥١﴾ |
| 52. ಅವರು ಮಾಡಿದ ಕರ್ಮಗಳೆಲ್ಲವೂ ಕರ್ಮಪುಸ್ತಕಗಳಲ್ಲಿವೆ. | وَكُلُّ شَيۡءٖ فَعَلُوهُ فِي ٱلزُّبُرِ ﴿٥٢﴾ |
| 53. ಚಿಕ್ಕ ಮತ್ತು ದೊಡ್ಡದಾದ ಎಲ್ಲವನ್ನೂ ನಮೂದಿಸಲಾಗಿದೆ. | وَكُلُّ صَغِيرٖ وَكَبِيرٖ مُّسۡتَطَرٌ ﴿٥٣﴾ |
| 54. ನಿಶ್ಚಯವಾಗಿಯೂ ದೇವಭಯವುಳ್ಳವರು ಸ್ವರ್ಗೋದ್ಯಾನಗಳಲ್ಲಿ ಮತ್ತು ನದಿಗಳಲ್ಲಿರುವರು. | إِنَّ ٱلۡمُتَّقِينَ فِي جَنَّٰتٖ وَنَهَرٖ ﴿٥٤﴾ |
| 55. ಗೌರವದ ಆಸನದಲ್ಲಿ, ಬಲಿಷ್ಠ ಸಾಮ್ರಾಟನ ಬಳಿಯಲ್ಲಿ. | فِي مَقۡعَدِ صِدۡقٍ عِندَ مَلِيكٖ مُّقۡتَدِرِۭ ﴿٥٥﴾ |

# 55. ಅರ್ರಹ್ಮಾನ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ಪರಮ ದಯಾಳು. | ٱلرَّحۡمَٰنُ ١ |
| 2. | ಕುರ್‌ಆನನ್ನು ಕಲಿಸಿದನು. | عَلَّمَ ٱلۡقُرۡءَانَ ٢ |
| 3. | ಮನುಷ್ಯನನ್ನು ಸೃಷ್ಟಿಸಿದನು. | خَلَقَ ٱلۡإِنسَٰنَ ٣ |
| 4. | ಅವನಿಗೆ ಮಾತನಾಡಲು ಕಲಿಸಿದನು. | عَلَّمَهُ ٱلۡبَيَانَ ٤ |
| 5. | ಸೂರ್ಯ ಮತ್ತು ಚಂದ್ರ (ನಿಶ್ಚಿತ) ಗಣನೆಯಲ್ಲಿವೆ. | ٱلشَّمۡسُ وَٱلۡقَمَرُ بِحُسۡبَانٖ ٥ |
| 6. | ಸಸ್ಯಗಳು ಮತ್ತು ಮರಗಳು (ಅಲ್ಲಾಹನಿಗೆ) ಸಾಷ್ಟಾಂಗ ಮಾಡುತ್ತಿವೆ. | وَٱلنَّجۡمُ وَٱلشَّجَرُ يَسۡجُدَانِ ٦ |
| 7. | ಅವನು ಆಕಾಶವನ್ನು ಎತ್ತರಕ್ಕೇರಿಸಿದನು ಮತ್ತು ತಕ್ಕಡಿಯನ್ನು ಸ್ಥಾಪಿಸಿದನು.[1] | وَٱلسَّمَآءَ رَفَعَهَا وَوَضَعَ ٱلۡمِيزَانَ ٧ |
| 8. | ನೀವು ತೂಕದಲ್ಲಿ ಅಸಮತೋಲನ ಮಾಡದಿರುವುದಕ್ಕಾಗಿ. | أَلَّا تَطۡغَوۡاْ فِي ٱلۡمِيزَانِ ٨ |
| 9. | ನೀವು ನ್ಯಾಯದೊಂದಿಗೆ ತಕ್ಕಡಿಯನ್ನು ಸ್ಥಾಪಿಸಿರಿ. ತೂಕದಲ್ಲಿ ಕಡಿಮೆ ಮಾಡಬೇಡಿ. | وَأَقِيمُواْ ٱلۡوَزۡنَ بِٱلۡقِسۡطِ وَلَا تُخۡسِرُواْ ٱلۡمِيزَانَ ٩ |
| 10. | ಅವನು ಭೂಮಿಯನ್ನು ಮನುಷ್ಯರಿಗೋಸ್ಕರ ಇಟ್ಟನು. | وَٱلۡأَرۡضَ وَضَعَهَا لِلۡأَنَامِ ١٠ |
| 11. | ಅದರಲ್ಲಿ ಹಣ್ಣು-ಹಂಪಲುಗಳು ಮತ್ತು ಪೊರೆಗಳಿರುವ ಖರ್ಜೂರದ ಮರಗಳಿವೆ. | فِيهَا فَٰكِهَةٞ وَٱلنَّخۡلُ ذَاتُ ٱلۡأَكۡمَامِ ١١ |
| 12. | ಹೊಟ್ಟಿರುವ ಧಾನ್ಯಗಳು ಮತ್ತು ಸುಗಂಧಪೂರಿತ ಸಸ್ಯಗಳಿವೆ. | وَٱلۡحَبُّ ذُو ٱلۡعَصۡفِ وَٱلرَّيۡحَانُ ١٢ |
| 13. | ಹಾಗಾದರೆ ನೀವಿಬ್ಬರು (ಜಿನ್ನ್ ಮತ್ತು ಮನುಷ್ಯರು) ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? | فَبِأَيِّ ءَالَآءِ رَبِّكُمَا تُكَذِّبَانِ ١٣ |
| 14. | ಅವನು ಮನುಷ್ಯನನ್ನು ಕುಂಬಾರಿಕೆಯ ಜೇಡಿಮಣ್ಣಿನಿಂದ ಸೃಷ್ಟಿಸಿದನು. | خَلَقَ ٱلۡإِنسَٰنَ مِن صَلۡصَٰلٖ كَٱلۡفَخَّارِ ١٤ |
| 15. | ಜಿನ್ನ್‌ಗಳನ್ನು ಬೆಂಕಿಯ ಜ್ವಾಲೆಯಿಂದ ಸೃಷ್ಟಿಸಿದನು. | وَخَلَقَ ٱلۡجَآنَّ مِن مَّارِجٖ مِّن نَّارٖ ١٥ |
| 16. | ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) | فَبِأَيِّ ءَالَآءِ رَبِّكُمَا تُكَذِّبَانِ ١٦ |

[1] ಅಂದರೆ ಭೂಮಿಯಲ್ಲಿ ನ್ಯಾಯವನ್ನು ಸ್ಥಾಪಿಸಿದನು. ನ್ಯಾಯದಿಂದ ವ್ಯವಹರಿಸುವಂತೆ ಮನುಷ್ಯರಿಗೆ ಆಜ್ಞಾಪಿಸಿದನು.

ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ?

17. ಅವನು ಎರಡು ಉದಯಸ್ಥಾನಗಳ ಮತ್ತು ಎರಡು ಅಸ್ತಮ-ಸ್ಥಾನಗಳ ಪರಿಪಾಲಕನಾಗಿದ್ದಾನೆ.[1] — رَبُّ ٱلۡمَشۡرِقَيۡنِ وَرَبُّ ٱلۡمَغۡرِبَيۡنِ ١٧

18. ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? — فَبِأَيِّ ءَالَآءِ رَبِّكُمَا تُكَذِّبَانِ ١٨

19. ಅವನು ಎರಡು ಸಮುದ್ರಗಳನ್ನು ಪರಸ್ಪರ ಬೆರೆಯುವಂತೆ ಹರಿಯಲು ಬಿಟ್ಟನು. — مَرَجَ ٱلۡبَحۡرَيۡنِ يَلۡتَقِيَانِ ١٩

20. ಅವೆರಡರ ನಡುವೆ ಒಂದು ತಡೆಯಿದ್ದು ಅವು ಅದನ್ನು ಮೀರಿ ಹೋಗುವುದಿಲ್ಲ.[2] — بَيۡنَهُمَا بَرۡزَخٞ لَّا يَبۡغِيَانِ ٢٠

21. ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? — فَبِأَيِّ ءَالَآءِ رَبِّكُمَا تُكَذِّبَانِ ٢١

22. ಅವೆರಡರಿಂದಲೂ ಮುತ್ತು ಮತ್ತು ಹವಳಗಳು ಹೊರಬರುತ್ತವೆ. — يَخۡرُجُ مِنۡهُمَا ٱللُّؤۡلُؤُ وَٱلۡمَرۡجَانُ ٢٢

23. ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? — فَبِأَيِّ ءَالَآءِ رَبِّكُمَا تُكَذِّبَانِ ٢٣

24. ಸಮುದ್ರದಲ್ಲಿ ಬೆಟ್ಟಗಳಂತೆ ಎತ್ತರವಾಗಿದ್ದು ಸಂಚರಿಸುವ ಹಡಗುಗಳು ಅವನ ನಿಯಂತ್ರಣದಲ್ಲಿವೆ. — وَلَهُ ٱلۡجَوَارِ ٱلۡمُنشَـَٔاتُ فِي ٱلۡبَحۡرِ كَٱلۡأَعۡلَٰمِ ٢٤

25. ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? — فَبِأَيِّ ءَالَآءِ رَبِّكُمَا تُكَذِّبَانِ ٢٥

26. ಭೂಮಿಯ ಮೇಲಿರುವ ಎಲ್ಲವೂ ನಾಶವಾಗಲಿವೆ. — كُلُّ مَنۡ عَلَيۡهَا فَانٖ ٢٦

27. ನಿಮ್ಮ ಪರಿಪಾಲಕನ (ಅಲ್ಲಾಹನ) ಮಹತ್ವಪೂರ್ಣ ಮತ್ತು ಗೌರವಾರ್ಹವಾದ ಮುಖವು ಮಾತ್ರ ಅವಶೇಷಿಸುತ್ತದೆ. — وَيَبۡقَىٰ وَجۡهُ رَبِّكَ ذُو ٱلۡجَلَٰلِ وَٱلۡإِكۡرَامِ ٢٧

28. ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? — فَبِأَيِّ ءَالَآءِ رَبِّكُمَا تُكَذِّبَانِ ٢٨

29. ಭೂಮ್ಯಾಕಾಶಗಳಲ್ಲಿರುವವರೆಲ್ಲರೂ ಅವನಲ್ಲಿ ಬೇಡುತ್ತಾರೆ. ಪ್ರತಿದಿನವೂ ಅವನು ಒಂದು ಕೆಲಸದಲ್ಲಿದ್ದಾನೆ. — يَسۡـَٔلُهُۥ مَن فِي ٱلسَّمَٰوَٰتِ وَٱلۡأَرۡضِۚ كُلَّ يَوۡمٍ هُوَ فِي شَأۡنٖ ٢٩

---

[1] ಅಂದರೆ ಬೇಸಿಗೆಗಾಲದ ಉದಯಸ್ಥಾನ ಮತ್ತು ಚಳಿಗಾಲದ ಉದಯಸ್ಥಾನ. ಅದೇ ರೀತಿ ಬೇಸಿಗೆಗಾಲದ ಅಸ್ತಮಸ್ಥಾನ ಮತ್ತು ಚಳಿಗಾಲದ ಅಸ್ತಮಸ್ಥಾನ.

[2] ಎರಡು ಸಮುದ್ರಗಳು ಎಂದರೆ ನೀರಿನ ಎರಡು ಬೇರೆ ಬೇರೆ ಅಸ್ತಿತ್ವಗಳು. ಒಂದು ಸಿಹಿ ನೀರನ್ನು ಹೊಂದಿರುವ ನದಿ ಮತ್ತು ಇನ್ನೊಂದು ಉಪ್ಪು ನೀರನ್ನು ಹೊಂದಿರುವ ಕಡಲು. ಈ ಎರಡು ನೀರುಗಳು ಪರಸ್ಪರ ಸೇರುವಾಗ ಬೆರೆಯದೆ ಬಹುದೂರದ ತನಕ ಹರಿಯುತ್ತವೆ.

30. ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ?

فَبِأَيِّ ءَالَآءِ رَبِّكُمَا تُكَذِّبَانِ ٣٠

31. ಓ ಜಿನ್ನ್ ಮತ್ತು ಮನುಷ್ಯರ ಸಮೂಹಗಳೇ! ಸದ್ಯವೇ ನಾವು ನಿಮಗೋಸ್ಕರ ಸಂಪೂರ್ಣ ಬಿಡುವು ಮಾಡಿಕೊಳ್ಳುವೆವು.

سَنَفۡرُغُ لَكُمۡ أَيُّهَ ٱلثَّقَلَانِ ٣١

32. ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ?

فَبِأَيِّ ءَالَآءِ رَبِّكُمَا تُكَذِّبَانِ ٣٢

33. ಓ ಜಿನ್ನ್ ಮತ್ತು ಮನುಷ್ಯರ ಸಮೂಹಗಳೇ! ಭೂಮ್ಯಾಕಾಶಗಳ ಸೀಮೆಗಳಿಂದ ಹೊರಗೆ ಓಡಿಹೋಗುವ ಸಾಮರ್ಥ್ಯ ನಿಮಗಿದ್ದರೆ ಓಡಿಹೋಗಿರಿ. ಪ್ರಬಲ ಶಕ್ತಿಯಿಲ್ಲದೆ ನಿಮಗೆ ಓಡಿಹೋಗಲು ಸಾಧ್ಯವಿಲ್ಲ.

يَٰمَعۡشَرَ ٱلۡجِنِّ وَٱلۡإِنسِ إِنِ ٱسۡتَطَعۡتُمۡ أَن تَنفُذُواْ مِنۡ أَقۡطَارِ ٱلسَّمَٰوَٰتِ وَٱلۡأَرۡضِ فَٱنفُذُواْۚ لَا تَنفُذُونَ إِلَّا بِسُلۡطَٰنٖ ٣٣

34. ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ?

فَبِأَيِّ ءَالَآءِ رَبِّكُمَا تُكَذِّبَانِ ٣٤

35. ನಿಮ್ಮ ಮೇಲೆ ಬೆಂಕಿಯ ಜ್ವಾಲೆಯನ್ನು ಮತ್ತು ಹೊಗೆಯನ್ನು ಬಿಡಲಾಗುವುದು. ಆಗ ನಿಮಗೆ ನಿಮ್ಮನ್ನು ರಕ್ಷಿಸಿಕೊಳ್ಳಲು ಸಾಧ್ಯವಾಗುವುದಿಲ್ಲ.

يُرۡسَلُ عَلَيۡكُمَا شُوَاظٞ مِّن نَّارٖ وَنُحَاسٞ فَلَا تَنتَصِرَانِ ٣٥

36. ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ?

فَبِأَيِّ ءَالَآءِ رَبِّكُمَا تُكَذِّبَانِ ٣٦

37. ಆಕಾಶವು ಸಿಡಿದು ಹೋಳಾಗಿ ಕೆಂಪು ಚರ್ಮದಂತೆ ಕೆಂಪಾಗುವಾಗ.

فَإِذَا ٱنشَقَّتِ ٱلسَّمَآءُ فَكَانَتۡ وَرۡدَةٗ كَٱلدِّهَانِ ٣٧

38. ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ?

فَبِأَيِّ ءَالَآءِ رَبِّكُمَا تُكَذِّبَانِ ٣٨

39. ಅಂದು ಯಾವುದೇ ಮನುಷ್ಯನಲ್ಲಿ ಅಥವಾ ಜಿನ್ನ್‌ನಲ್ಲಿ ಅವನು ಮಾಡಿದ ಪಾಪಗಳ ಬಗ್ಗೆ ಕೇಳಲಾಗುವುದಿಲ್ಲ.[1]

فَيَوۡمَئِذٖ لَّا يُسۡـَٔلُ عَن ذَنۢبِهِۦٓ إِنسٞ وَلَا جَآنّٞ ٣٩

40. ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ?

فَبِأَيِّ ءَالَآءِ رَبِّكُمَا تُكَذِّبَانِ ٤٠

41. ಅಪರಾಧಿಗಳನ್ನು ಅವರ ಲಕ್ಷಣಗಳ ಮೂಲಕ

يُعۡرَفُ ٱلۡمُجۡرِمُونَ بِسِيمَٰهُمۡ فَيُؤۡخَذُ بِٱلنَّوَٰصِي

[1] ಅಂದರೆ ಮನುಷ್ಯನು ಮಾಡಿದ ಪಾಪಗಳ ಬಗ್ಗೆ ಅವನೊಡನೆ ಕೇಳಲಾಗುವುದಿಲ್ಲ. ಏಕೆಂದರೆ ಎಲ್ಲವನ್ನೂ ದೇವದೂತರು ದಾಖಲಿಸಿಟ್ಟಿದ್ದಾರೆ ಮತ್ತು ಎಲ್ಲವೂ ಅವನ ಕರ್ಮಪುಸ್ತಕದಲ್ಲಿದೆ. ಬದಲಿಗೆ, ಅವನೊಡನೆ ಆ ಪಾಪಗಳನ್ನು ಏಕೆ ಮಾಡಿದೆ ಎಂದು ಕೇಳಲಾಗುವುದು. ಇನ್ನೊಂದು ಅರ್ಥದ ಪ್ರಕಾರ, ಅವರ ಪಾಪಗಳ ಬಗ್ಗೆ ಅವರೊಡನೆ ಕೇಳಲಾಗುವುದಿಲ್ಲ. ಅವರ ಬಾಯಿಗೆ ಮೊಹರು ಹಾಕಲಾಗುವುದು ಮತ್ತು ಅವರ ಅಂಗಾಂಗಗಳು ಎಲ್ಲವನ್ನೂ ಹೇಳಿಬಿಡುವುವು.

| | | |
|---|---|---|
| | ಗುರುತಿಸಲಾಗುವುದು. ಅವರನ್ನು ಅವರ ಜುಟ್ಟು ಮತ್ತು ಪಾದಗಳನ್ನು ಹಿಡಿದು ಒಯ್ಯಲಾಗುವುದು. | وَٱلۡأَقۡدَامِ ﴿٤١﴾ |
| 42. | ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? | فَبِأَيِّ ءَالَآءِ رَبِّكُمَا تُكَذِّبَانِ ﴿٤٢﴾ |
| 43. | ಇದೇ ಅಪರಾಧಿಗಳು ನಿಷೇಧಿಸುತ್ತಿದ್ದ ನರಕಾಗ್ನಿ. | هَٰذِهِۦ جَهَنَّمُ ٱلَّتِي يُكَذِّبُ بِهَا ٱلۡمُجۡرِمُونَ ﴿٤٣﴾ |
| 44. | ಅವರು ಅದರ ಮತ್ತು ಕುದಿಯುವ ಬಿಸಿನೀರಿನ ನಡುವೆ ಸುತ್ತುವರು. | يَطُوفُونَ بَيۡنَهَا وَبَيۡنَ حَمِيمٍ ءَانٖ ﴿٤٤﴾ |
| 45. | ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? | فَبِأَيِّ ءَالَآءِ رَبِّكُمَا تُكَذِّبَانِ ﴿٤٥﴾ |
| 46. | ತನ್ನ ಪರಿಪಾಲಕನ (ಅಲ್ಲಾಹನ) ಮುಂದೆ ನಿಲ್ಲಬೇಕೆಂಬ ಭಯವಿರುವ ವ್ಯಕ್ತಿಗೆ ಎರಡು ಸ್ವರ್ಗಗಳಿವೆ. | وَلِمَنۡ خَافَ مَقَامَ رَبِّهِۦ جَنَّتَانِ ﴿٤٦﴾ |
| 47. | ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? | فَبِأَيِّ ءَالَآءِ رَبِّكُمَا تُكَذِّبَانِ ﴿٤٧﴾ |
| 48. | ಅವೆರಡರಲ್ಲೂ ಅನೇಕ ಗೆಲ್ಲುಗಳು ಮತ್ತು ಶಾಖೆಗಳಿವೆ. | ذَوَاتَآ أَفۡنَانٖ ﴿٤٨﴾ |
| 49. | ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? | فَبِأَيِّ ءَالَآءِ رَبِّكُمَا تُكَذِّبَانِ ﴿٤٩﴾ |
| 50. | ಅವೆರಡರಲ್ಲೂ ಹರಿಯುವ ಎರಡು ತೊರೆಗಳಿವೆ. | فِيهِمَا عَيۡنَانِ تَجۡرِيَانِ ﴿٥٠﴾ |
| 51. | ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? | فَبِأَيِّ ءَالَآءِ رَبِّكُمَا تُكَذِّبَانِ ﴿٥١﴾ |
| 52. | ಅವೆರಡರಲ್ಲೂ ಎಲ್ಲಾ ತರಹದ ಹಣ್ಣುಗಳಲ್ಲೂ ಎರಡೆರಡು ವಿಧಗಳಿವೆ. | فِيهِمَا مِن كُلِّ فَٰكِهَةٖ زَوۡجَانِ ﴿٥٢﴾ |
| 53. | ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? | فَبِأَيِّ ءَالَآءِ رَبِّكُمَا تُكَذِّبَانِ ﴿٥٣﴾ |
| 54. | ಅವರು ಕೆಲವು ಹಾಸುಗಳ ಮೇಲೆ ಒರಗಿ ಕುಳಿತುಕೊಳ್ಳುವರು. ಆ ಹಾಸುಗಳ ಒಳಪದರವು ದಪ್ಪ ರೇಷ್ಮೆ ಬಟ್ಟೆಯದ್ದಾಗಿದೆ. ಆ ಎರಡು ಸ್ವರ್ಗಗಳಲ್ಲಿರುವ ಹಣ್ಣುಗಳು ಹತ್ತಿರಕ್ಕೆ ಬಾಗಿಕೊಂಡಿರುವುವು. | مُتَّكِـِٔينَ عَلَىٰ فُرُشِۭ بَطَآئِنُهَا مِنۡ إِسۡتَبۡرَقٖۚ وَجَنَى ٱلۡجَنَّتَيۡنِ دَانٖ ﴿٥٤﴾ |

| | | |
|---|---|---|
| 55. | ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? | فَبِأَيِّ ءَالَآءِ رَبِّكُمَا تُكَذِّبَانِ ٥٥ |
| 56. | ಅಲ್ಲಿ ದೃಷ್ಟಿಯನ್ನು ತಗ್ಗಿಸುವ ಅಪ್ಸರೆಯರಿದ್ದಾರೆ. ಅವರಿಗಿಂತ ಮೊದಲು ಯಾವುದೇ ಮನುಷ್ಯ ಅಥವಾ ಜಿನ್ನ್ ಆ ಅಪ್ಸರೆಯರನ್ನು ಮುಟ್ಟಿಲ್ಲ. | فِيهِنَّ قَٰصِرَٰتُ ٱلطَّرۡفِ لَمۡ يَطۡمِثۡهُنَّ إِنسٌ قَبۡلَهُمۡ وَلَا جَآنٌّ ٥٦ |
| 57. | ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? | فَبِأَيِّ ءَالَآءِ رَبِّكُمَا تُكَذِّبَانِ ٥٧ |
| 58. | ಆ ಅಪ್ಸರೆಯರು ಮಾಣಿಕ್ಯ ಮತ್ತು ಹವಳದಂತೆ ಕಾಣುತ್ತಾರೆ. | كَأَنَّهُنَّ ٱلۡيَاقُوتُ وَٱلۡمَرۡجَانُ ٥٨ |
| 59. | ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? | فَبِأَيِّ ءَالَآءِ رَبِّكُمَا تُكَذِّبَانِ ٥٩ |
| 60. | ಒಳಿತಿಗೆ ಪ್ರತಿಫಲವಾಗಿ ಒಳಿತಲ್ಲದೆ ಬೇರೇನಿದೆ? | هَلۡ جَزَآءُ ٱلۡإِحۡسَٰنِ إِلَّا ٱلۡإِحۡسَٰنُ ٦٠ |
| 61. | ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? | فَبِأَيِّ ءَالَآءِ رَبِّكُمَا تُكَذِّبَانِ ٦١ |
| 62. | ಅವೆರಡರ ಹೊರತಾಗಿ ಬೇರೆ ಎರಡು ಸ್ವರ್ಗಗಳಿವೆ. | وَمِن دُونِهِمَا جَنَّتَانِ ٦٢ |
| 63. | ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? | فَبِأَيِّ ءَالَآءِ رَبِّكُمَا تُكَذِّبَانِ ٦٣ |
| 64. | ಅವೆರಡು ಕಡುಹಸಿರು ಬಣ್ಣದ್ದಾಗಿವೆ. | مُدۡهَآمَّتَانِ ٦٤ |
| 65. | ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? | فَبِأَيِّ ءَالَآءِ رَبِّكُمَا تُكَذِّبَانِ ٦٥ |
| 66. | ಅವೆರಡರಲ್ಲೂ ರಭಸವಾಗಿ ಹರಿಯುವ ಎರಡು ತೊರೆಗಳಿವೆ. | فِيهِمَا عَيۡنَانِ نَضَّاخَتَانِ ٦٦ |
| 67. | ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? | فَبِأَيِّ ءَالَآءِ رَبِّكُمَا تُكَذِّبَانِ ٦٧ |
| 68. | ಅವೆರಡರಲ್ಲೂ ಹಣ್ಣುಗಳು, ಖರ್ಜೂರದ ಮರಗಳು ಮತ್ತು ದಾಳಿಂಬೆಗಳಿವೆ. | فِيهِمَا فَٰكِهَةٌ وَنَخۡلٌ وَرُمَّانٌ ٦٨ |
| 69. | ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? | فَبِأَيِّ ءَالَآءِ رَبِّكُمَا تُكَذِّبَانِ ٦٩ |
| 70. | ಅವುಗಳಲ್ಲಿ ಶ್ರೇಷ್ಠ ಗುಣನಡತೆಯ ಸುರಸುಂದರಿ ಮಹಿಳೆಯರಿದ್ದಾರೆ. | فِيهِنَّ خَيۡرَٰتٌ حِسَانٌ ٧٠ |

71. ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? فَبِأَيِّ ءَالَآءِ رَبِّكُمَا تُكَذِّبَانِ ﴿٧١﴾

72. ಡೇರೆಗಳಲ್ಲಿ ಜೋಪಾನವಾಗಿಡಲಾದ ಬೆಳ್ಳಗಿನ ಅಪ್ಸರೆಯರು! حُورٌ مَّقْصُورَٰتٌ فِى ٱلْخِيَامِ ﴿٧٢﴾

73. ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? فَبِأَيِّ ءَالَآءِ رَبِّكُمَا تُكَذِّبَانِ ﴿٧٣﴾

74. ಅವರಿಗಿಂತ ಮೊದಲು ಯಾವುದೇ ಮನುಷ್ಯ ಅಥವಾ ಜಿನ್ನ್ ಆ ಅಪ್ಸರೆಯರನ್ನು ಮುಟ್ಟಿಲ್ಲ. لَمْ يَطْمِثْهُنَّ إِنسٌ قَبْلَهُمْ وَلَا جَآنٌّ ﴿٧٤﴾

75. ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? فَبِأَيِّ ءَالَآءِ رَبِّكُمَا تُكَذِّبَانِ ﴿٧٥﴾

76. ಅವರು ಹಸಿರು ದಿಂಬುಗಳಲ್ಲಿ ಮತ್ತು ಸುಂದರ ಜಮಾಖಾನೆಗಳಲ್ಲಿ ಒರಗಿ ಕುಳಿತುಕೊಳ್ಳುವರು. مُتَّكِـِٔينَ عَلَىٰ رَفْرَفٍ خُضْرٍ وَعَبْقَرِىٍّ حِسَانٍ ﴿٧٦﴾

77. ಹಾಗಾದರೆ ನೀವಿಬ್ಬರು ನಿಮ್ಮ ಪರಿಪಾಲಕನ (ಅಲ್ಲಾಹನ) ಯಾವೆಲ್ಲಾ ಅನುಗ್ರಹಗಳನ್ನು ನಿಷೇಧಿಸುವಿರಿ? فَبِأَيِّ ءَالَآءِ رَبِّكُمَا تُكَذِّبَانِ ﴿٧٧﴾

78. ಮಹತ್ವಪೂರ್ಣನು ಮತ್ತು ಗೌರವಾರ್ಹನಾದ ನಿಮ್ಮ ಪರಿಪಾಲಕನ (ಅಲ್ಲಾಹನ) ಹೆಸರು ಸಮೃದ್ಧಪೂರ್ಣವಾಗಿದೆ. تَبَٰرَكَ ٱسْمُ رَبِّكَ ذِى ٱلْجَلَٰلِ وَٱلْإِكْرَامِ ﴿٧٨﴾

# 56. ಅಲ್-ವಾಕಿಅ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ بِسْمِ ٱللَّهِ ٱلرَّحْمَٰنِ ٱلرَّحِيمِ

1. ಪುನರುತ್ಥಾನವು ಸಂಭವಿಸುವಾಗ. إِذَا وَقَعَتِ ٱلْوَاقِعَةُ ﴿١﴾

2. ಅದು ಸಂಭವಿಸುತ್ತದೆ ಎಂಬುದರಲ್ಲಿ ಯಾವುದೇ ನಿರಾಕರಣೆಯಿಲ್ಲ. لَيْسَ لِوَقْعَتِهَا كَاذِبَةٌ ﴿٢﴾

3. ಅದು (ಕೆಲವರನ್ನು) ಕೆಳಗಿಳಿಸುತ್ತದೆ ಮತ್ತು (ಕೆಲವರನ್ನು) ಮೇಲೇರಿಸುತ್ತದೆ.[1] خَافِضَةٌ رَّافِعَةٌ ﴿٣﴾

4. ಭೂಮಿಯನ್ನು ತೀಕ್ಷ್ಣವಾಗಿ ನಡುಗಿಸಲಾಗುವಾಗ. إِذَا رُجَّتِ ٱلْأَرْضُ رَجًّا ﴿٤﴾

---

[1] ಕೆಳಗಿಳಿಸುವುದು ಮತ್ತು ಮೇಲೇರಿಸುವುದು ಎಂದರೆ ಗೌರವಿಸುವುದು ಮತ್ತು ಅವಮಾನಿಸುವುದು. ಪರಲೋಕದಲ್ಲಿ ಅಲ್ಲಾಹನ ನೀತಿವಂತ ದಾಸರನ್ನು ಉನ್ನತ ಸ್ಥಾನಮಾನಗಳಿಗೆ ಏರಿಸಲಾಗುತ್ತದೆ. ಅವರು ಇಹಲೋಕದಲ್ಲಿ ಎಷ್ಟು ಅವಮಾನಗಳನ್ನು ಎದುರಿಸಬೇಕಾಗಿ ಬಂದಿದ್ದರೂ ಸಹ. ಅದೇ ರೀತಿ ಪರಲೋಕದಲ್ಲಿ ದುಷ್ಕರ್ಮಿಗಳನ್ನು ಅತ್ಯಂತ ಅವಮಾನಕರ ಸ್ಥಾನಗಳಿಗೆ ಇಳಿಸಲಾಗುವುದು. ಅವರು ಇಹಲೋಕದಲ್ಲಿ ಎಷ್ಟೇ ಗೌರವಾರ್ಹರಾಗಿದ್ದರೂ ಸಹ.

| | | |
|---|---|---|
| 5. | ಪರ್ವತಗಳು ಸಂಪೂರ್ಣ ನುಚ್ಚುನೂರಾಗುವಾಗ. | وَبُسَّتِ ٱلْجِبَالُ بَسًّا ﴿٥﴾ |
| 6. | ಅವು ಚೆದರಿದ ಧೂಳಿಯಾಗುವಾಗ. | فَكَانَتْ هَبَآءً مُّنۢبَثًّا ﴿٦﴾ |
| 7. | ನೀವು ಮೂರು ಗುಂಪುಗಳಾಗುವಿರಿ. | وَكُنتُمْ أَزْوَٰجًا ثَلَٰثَةً ﴿٧﴾ |
| 8. | ಬಲಭಾಗದ ಜನರು—ಬಲಭಾಗದ ಜನರ ಸ್ಥಿತಿಯೇನು?[1] | فَأَصْحَٰبُ ٱلْمَيْمَنَةِ مَآ أَصْحَٰبُ ٱلْمَيْمَنَةِ ﴿٨﴾ |
| 9. | ಎಡಭಾಗದ ಜನರು—ಎಡಭಾಗದ ಜನರ ಸ್ಥಿತಿಯೇನು?[2] | وَأَصْحَٰبُ ٱلْمَشْـَٔمَةِ مَآ أَصْحَٰبُ ٱلْمَشْـَٔمَةِ ﴿٩﴾ |
| 10. | ಮುಂಚೂಣಿಯಲ್ಲಿದ್ದವರು ಮುಂಚೂಣಿಯಲ್ಲಿಯೇ ಇರುವರು.[3] | وَٱلسَّٰبِقُونَ ٱلسَّٰبِقُونَ ﴿١٠﴾ |
| 11. | ಅವರು (ಅಲ್ಲಾಹನ) ಸಾಮೀಪ್ಯ ಪಡೆದವರು. | أُو۟لَٰٓئِكَ ٱلْمُقَرَّبُونَ ﴿١١﴾ |
| 12. | ಅವರು ಸುಖಾನುಗ್ರಹಗಳು ತುಂಬಿದ ಸ್ವರ್ಗಗಳಲ್ಲಿರುವರು. | فِى جَنَّٰتِ ٱلنَّعِيمِ ﴿١٢﴾ |
| 13. | ಮೊದಲಿನವರಲ್ಲಿ ಸೇರಿದ ಒಂದು (ದೊಡ್ಡ) ಗುಂಪು. | ثُلَّةٌ مِّنَ ٱلْأَوَّلِينَ ﴿١٣﴾ |
| 14. | ನಂತರದವರಲ್ಲಿ ಸೇರಿದ ಕೆಲವರು. | وَقَلِيلٌ مِّنَ ٱلْـَٔاخِرِينَ ﴿١٤﴾ |
| 15. | ಅವರು ಸ್ವರ್ಣದಾರದಿಂದ ನೇಯ್ದ ಮಂಚಗಳಲ್ಲಿರುವರು. | عَلَىٰ سُرُرٍ مَّوْضُونَةٍ ﴿١٥﴾ |
| 16. | ಅವುಗಳಲ್ಲಿ ಪರಸ್ಪರ ಎದುರುಬದುರಾಗಿ ಒರಗಿ ಕುಳಿತಿರುವರು. | مُّتَّكِـِٔينَ عَلَيْهَا مُتَقَٰبِلِينَ ﴿١٦﴾ |
| 17. | ಚಿರಂಜೀವಿಗಳಾದ ಹುಡುಗರು ಅವರ ನಡುವೆ ಸುತ್ತುವರು.[4] | يَطُوفُ عَلَيْهِمْ وِلْدَٰنٌ مُّخَلَّدُونَ ﴿١٧﴾ |
| 18. | ಲೋಟಗಳು, ಹೂಜಿಗಳು ಮತ್ತು ಹರಿಯುವ ತೊರೆಯ ಶರಾಬನ್ನು ಹೊಂದಿರುವ ಪಾತ್ರೆಗಳೊಂದಿಗೆ. | بِأَكْوَابٍ وَأَبَارِيقَ وَكَأْسٍ مِّن مَّعِينٍ ﴿١٨﴾ |
| 19. | ಅದನ್ನು ಕುಡಿಯುವುದರಿಂದ ತಲೆನೋವು ಅಥವಾ ಅಮಲು ಉಂಟಾಗುವುದಿಲ್ಲ. | لَّا يُصَدَّعُونَ عَنْهَا وَلَا يُنزِفُونَ ﴿١٩﴾ |
| 20. | ಅವರಿಗೆ ಇಷ್ಟವಾದ ಹಣ್ಣುಗಳೊಂದಿಗೆ. | وَفَٰكِهَةٍ مِّمَّا يَتَخَيَّرُونَ ﴿٢٠﴾ |
| 21. | ಅವರು ಬಯಸುವ ಹಕ್ಕಿಗಳ ಮಾಂಸಗಳೊಂದಿಗೆ. | وَلَحْمِ طَيْرٍ مِّمَّا يَشْتَهُونَ ﴿٢١﴾ |
| 22. | (ಅಲ್ಲಿ) ಅರಳಿದ ಕಣ್ಣುಗಳಿರುವ ಬೆಳ್ಳಗಿನ ಅಪ್ಸರೆಗಳಿರುವರು. | وَحُورٌ عِينٌ ﴿٢٢﴾ |
| 23. | ಅವರು (ಚಿಪ್ಪುಗಳಲ್ಲಿ) ಜೋಪಾನವಾಗಿಡಲಾದ ಮುತ್ತುಗಳಂತೆ ಕಾಣುವರು. | كَأَمْثَٰلِ ٱللُّؤْلُؤِ ٱلْمَكْنُونِ ﴿٢٣﴾ |

[1] ಬಲಭಾಗದ ಜನರು ಎಂದರೆ ಕರ್ಮಪುಸ್ತಕವನ್ನು ಬಲಗೈಯಲ್ಲಿ ನೀಡಲಾಗುವವರು.

[2] ಎಡಭಾಗದ ಜನರು ಎಂದರೆ ಕರ್ಮಪುಸ್ತಕವನ್ನು ಎಡಗೈಯಲ್ಲಿ ನೀಡಲಾಗುವವರು.

[3] ಪರಲೋಕದಲ್ಲಿ ಜನರನ್ನು ಮೂರು ಗುಂಪುಗಳಾಗಿ ವಿಂಗಡಿಸಲಾಗುತ್ತದೆ. 1. ಮುಂಚೂಣಿಯಲ್ಲಿರುವವರು—ಇವರು ಸತ್ಯವಿಶ್ವಾಸಿಗಳಲ್ಲೇ ಅತ್ಯುತ್ಕೃಷ್ಟರು. 2. ಬಲಭಾಗದ ಜನರು—ಇವರು ಉಳಿದ ಸತ್ಯವಿಶ್ವಾಸಿಗಳು. 3. ಎಡಭಾಗದವರು—ಇವರು ಸತ್ಯನಿಷೇಧಿಗಳು.

[4] ಚಿರಂಜೀವಿಗಳಾದ ಹುಡುಗರು ಎಂದರೆ ಅವರು ಸದಾ ಹುಡುಗರೇ ಆಗಿರುತ್ತಾರೆ.

| | | |
|---|---|---|
| 24. | ಇವೆಲ್ಲವೂ ಅವರು ಮಾಡಿದ ಕರ್ಮಗಳಿಗೆ ಪ್ರತಿಫಲವಾಗಿವೆ. | جَزَآءَۢ بِمَا كَانُواْ يَعۡمَلُونَ ﴿٢٤﴾ |
| 25. | ಅವರು ಅಲ್ಲಿ ಅನಗತ್ಯ ಮಾತುಗಳನ್ನು ಮತ್ತು ದೋಷಪೂರಿತ ಮಾತುಗಳನ್ನು ಕೇಳುವುದಿಲ್ಲ. | لَا يَسۡمَعُونَ فِيهَا لَغۡوٗا وَلَا تَأۡثِيمًا ﴿٢٥﴾ |
| 26. | ಸಲಾಂ ಸಲಾಂ (ಶಾಂತಿ ಶಾಂತಿ) ಎಂಬ ಮಾತುಗಳ ಹೊರತು. | إِلَّا قِيلٗا سَلَٰمٗا سَلَٰمٗا ﴿٢٦﴾ |
| 27. | ಬಲಭಾಗದ ಜನರು—ಬಲಭಾಗದ ಜನರ ಸ್ಥಿತಿಯೇನು? | وَأَصۡحَٰبُ ٱلۡيَمِينِ مَآ أَصۡحَٰبُ ٱلۡيَمِينِ ﴿٢٧﴾ |
| 28. | ಅವರು ಮುಳ್ಳುಗಳಿಲ್ಲದ ಬೋರೆ ಮರಗಳಲ್ಲಿ. | فِي سِدۡرٖ مَّخۡضُودٖ ﴿٢٨﴾ |
| 29. | ಪದರ ಪದರ ಗೊನೆಗಳಿರುವ ಬಾಳೆಗಳಲ್ಲಿ. | وَطَلۡحٖ مَّنضُودٖ ﴿٢٩﴾ |
| 30. | ಸುದೀರ್ಘ ನೆರಳಿನಲ್ಲಿ. | وَظِلّٖ مَّمۡدُودٖ ﴿٣٠﴾ |
| 31. | ಹರಿಯುವ ನೀರಿನಲ್ಲಿ. | وَمَآءٖ مَّسۡكُوبٖ ﴿٣١﴾ |
| 32. | ಹೇರಳ ಹಣ್ಣು-ಹಂಪಲುಗಳಲ್ಲಿ. | وَفَٰكِهَةٖ كَثِيرَةٖ ﴿٣٢﴾ |
| 33. | ಅದು ಎಂದಿಗೂ ಮುಗಿಯುವುದಿಲ್ಲ ಮತ್ತು ತಡೆಯಲ್ಪಡುವುದಿಲ್ಲ. | لَّا مَقۡطُوعَةٖ وَلَا مَمۡنُوعَةٖ ﴿٣٣﴾ |
| 34. | ಎತ್ತರವಾಗಿರುವ ಹಾಸಿಗೆಗಳಲ್ಲಿ. | وَفُرُشٖ مَّرۡفُوعَةٍ ﴿٣٤﴾ |
| 35. | ನಿಶ್ಚಯವಾಗಿಯೂ ನಾವು ಅವರ ಪತ್ನಿಯರನ್ನು ವಿಶೇಷ ರೀತಿಯಲ್ಲಿ ಸೃಷ್ಟಿಸಿದ್ದೇವೆ. | إِنَّآ أَنشَأۡنَٰهُنَّ إِنشَآءٗ ﴿٣٥﴾ |
| 36. | ನಾವು ಅವರನ್ನು ಕನ್ಯೆಯರಾಗಿ ಮಾಡಿದ್ದೇವೆ. | فَجَعَلۡنَٰهُنَّ أَبۡكَارًا ﴿٣٦﴾ |
| 37. | ಪ್ರೀತಿಸುವವರಾಗಿ ಮತ್ತು ಸಮವಯಸ್ಕರಾಗಿ. | عُرُبًا أَتۡرَابٗا ﴿٣٧﴾ |
| 38. | ಇವೆಲ್ಲವೂ ಬಲಭಾಗದ ಜನರಿಗೋಸ್ಕರ. | لِّأَصۡحَٰبِ ٱلۡيَمِينِ ﴿٣٨﴾ |
| 39. | ಅವರು ಮೊದಲಿನವರಲ್ಲಿ ಸೇರಿದ ಒಂದು (ದೊಡ್ಡ) ಗುಂಪು. | ثُلَّةٞ مِّنَ ٱلۡأَوَّلِينَ ﴿٣٩﴾ |
| 40. | ನಂತರದವರಲ್ಲಿ ಸೇರಿದ ಒಂದು (ದೊಡ್ಡ) ಗುಂಪು. | وَثُلَّةٞ مِّنَ ٱلۡأٓخِرِينَ ﴿٤٠﴾ |
| 41. | ಎಡಭಾಗದ ಜನರು—ಎಡಭಾಗದ ಜನರ ಸ್ಥಿತಿಯೇನು? | وَأَصۡحَٰبُ ٱلشِّمَالِ مَآ أَصۡحَٰبُ ٱلشِّمَالِ ﴿٤١﴾ |
| 42. | ಅವರು ಬಿಸಿ ಗಾಳಿ ಮತ್ತು ಕುದಿಯುವ ನೀರಿನಲ್ಲಿರುವರು. | فِي سَمُومٖ وَحَمِيمٖ ﴿٤٢﴾ |
| 43. | ಕರಿ ಹೊಗೆಯ ನೆರಳುಗಳಲ್ಲಿ. | وَظِلّٖ مِّن يَحۡمُومٖ ﴿٤٣﴾ |
| 44. | ಅದು ತಂಪಾಗಿಲ್ಲ ಅಥವಾ ಆಹ್ಲಾದಕರವಾಗಿಲ್ಲ. | لَّا بَارِدٖ وَلَا كَرِيمٍ ﴿٤٤﴾ |
| 45. | ಇದಕ್ಕಿಂತ ಮೊದಲು (ಇಹಲೋಕದಲ್ಲಿ) ಅವರು ಐಶ್ವರ್ಯವಂತರಾಗಿದ್ದರು. | إِنَّهُمۡ كَانُواْ قَبۡلَ ذَٰلِكَ مُتۡرَفِينَ ﴿٤٥﴾ |

46. ಅವರು ದೊಡ್ಡ ದೊಡ್ಡ ಪಾಪಕೃತ್ಯಗಳಲ್ಲಿ ಪಟ್ಟುಹಿಡಿದು ಮುಂದುವರಿಯುತ್ತಿದ್ದರು.

وَكَانُواْ يُصِرُّونَ عَلَى ٱلۡحِنثِ ٱلۡعَظِيمِ ﴿٤٦﴾

47. ಅವರು ಹೇಳುತ್ತಿದ್ದರು: “ನಾವು ಸತ್ತು ಮಣ್ಣು ಮತ್ತು ಮೂಳೆಗಳಾಗಿ ಬಿಟ್ಟ ಬಳಿಕ ನಮ್ಮನ್ನು ಪುನಃ ಜೀವಂತವಾಗಿ ಎಬ್ಬಿಸಲಾಗುವುದೇ?

وَكَانُواْ يَقُولُونَ أَئِذَا مِتۡنَا وَكُنَّا تُرَابٗا وَعِظَٰمًا أَءِنَّا لَمَبۡعُوثُونَ ﴿٤٧﴾

48. ನಮ್ಮ ಪೂರ್ವಜರನ್ನು ಕೂಡ?”

أَوَءَابَآؤُنَا ٱلۡأَوَّلُونَ ﴿٤٨﴾

49. ಹೇಳಿರಿ: “ನಿಶ್ಚಯವಾಗಿಯೂ ನಿಮ್ಮಲ್ಲಿ ಮೊದಲಿನವರನ್ನು ಮತ್ತು ನಂತರದವರನ್ನು.

قُلۡ إِنَّ ٱلۡأَوَّلِينَ وَٱلۡأٓخِرِينَ ﴿٤٩﴾

50. ಒಂದು ನಿಶ್ಚಿತ ದಿನದ ಸಮಯದಲ್ಲಿ ಒಟ್ಟುಗೂಡಿಸಲಾಗುವುದು.

لَمَجۡمُوعُونَ إِلَىٰ مِيقَٰتِ يَوۡمٖ مَّعۡلُومٖ ﴿٥٠﴾

51. ನಂತರ, ಓ ಸತ್ಯನಿಷೇಧಿಗಳಾದ ದುರ್ಮಾರ್ಗಿಗಳೇ!

ثُمَّ إِنَّكُمۡ أَيُّهَا ٱلضَّآلُّونَ ٱلۡمُكَذِّبُونَ ﴿٥١﴾

52. ನೀವು ಖಂಡಿತ ಝಕ್ಕೂಮ್ ಮರದಿಂದ ತಿನ್ನುವಿರಿ.

لَأٓكِلُونَ مِن شَجَرٖ مِّن زَقُّومٖ ﴿٥٢﴾

53. ಅದರಿಂದ ನಿಮ್ಮ ಹೊಟ್ಟೆಗಳನ್ನು ತುಂಬಿಸುವಿರಿ.

فَمَالِـُٔونَ مِنۡهَا ٱلۡبُطُونَ ﴿٥٣﴾

54. ಅದರ ಮೇಲೆ ನೀವು ಕುದಿಯುವ ನೀರನ್ನು ಕುಡಿಯುವಿರಿ.

فَشَٰرِبُونَ عَلَيۡهِ مِنَ ٱلۡحَمِيمِ ﴿٥٤﴾

55. ಬಾಯಾರಿದ ಒಂಟೆಗಳು ಕುಡಿಯುವಂತೆ ಕುಡಿಯುವಿರಿ.

فَشَٰرِبُونَ شُرۡبَ ٱلۡهِيمِ ﴿٥٥﴾

56. ಇದು ಪ್ರತಿಫಲ ದಿನದಂದು ಅವರಿಗೆ ನೀಡಲಾಗುವ ಸತ್ಕಾರವಾಗಿದೆ.”

هَٰذَا نُزُلُهُمۡ يَوۡمَ ٱلدِّينِ ﴿٥٦﴾

57. ನಾವೇ ನಿಮ್ಮನ್ನು ಸೃಷ್ಟಿಸಿದವರು. ಆದರೂ ನೀವು ನಂಬುವುದಿಲ್ಲವೇಕೆ?

نَحۡنُ خَلَقۡنَٰكُمۡ فَلَوۡلَا تُصَدِّقُونَ ﴿٥٧﴾

58. ನೀವು ಸ್ರವಿಸುವ ವೀರ್ಯವನ್ನು ನೋಡಿದ್ದೀರಾ?

أَفَرَءَيۡتُم مَّا تُمۡنُونَ ﴿٥٨﴾

59. ಅದರಿಂದ ಮನುಷ್ಯನನ್ನು ಸೃಷ್ಟಿಸುವವರು ನೀವೋ? ಅಥವಾ ಸೃಷ್ಟಿಕರ್ತರು ನಾವೋ?

ءَأَنتُمۡ تَخۡلُقُونَهُۥٓ أَمۡ نَحۡنُ ٱلۡخَٰلِقُونَ ﴿٥٩﴾

60. ನಾವೇ ನಿಮ್ಮ ನಡುವೆ ಮರಣವನ್ನು ನಿಶ್ಚಯಿಸಿದವರು. ನಾವು ಸೋಲುವುದಿಲ್ಲ,

نَحۡنُ قَدَّرۡنَا بَيۡنَكُمُ ٱلۡمَوۡتَ وَمَا نَحۡنُ بِمَسۡبُوقِينَ ﴿٦٠﴾

61. ನಿಮ್ಮ ಸ್ಥಾನದಲ್ಲಿ ನಿಮ್ಮಂತಹವರನ್ನು ಸೃಷ್ಟಿಸುವ ಮತ್ತು ನಿಮ್ಮನ್ನು ನಿಮಗೆ (ಸ್ವಲ್ಪವೂ) ತಿಳಿದಿಲ್ಲದ ಹೊಸ ರೂಪದಲ್ಲಿ ಸೃಷ್ಟಿಸುವ ವಿಷಯದಲ್ಲಿ.

عَلَىٰٓ أَن نُّبَدِّلَ أَمۡثَٰلَكُمۡ وَنُنشِئَكُمۡ فِي مَا لَا تَعۡلَمُونَ ﴿٦١﴾

62. ಪ್ರಥಮ ಬಾರಿ ಸೃಷ್ಟಿಸಿದ ಬಗ್ಗೆ ನಿಮಗೆ ಚೆನ್ನಾಗಿ ತಿಳಿದಿದೆ. ಆದರೂ ನೀವೇಕೆ ಪಾಠ ಕಲಿಯುವುದಿಲ್ಲ?

وَلَقَدۡ عَلِمۡتُمُ ٱلنَّشۡأَةَ ٱلۡأُولَىٰ فَلَوۡلَا تَذَكَّرُونَ ﴿٦٢﴾

| | |
|---|---|
| 63. ನೀವು ಬಿತ್ತುವ (ಬೀಜವನ್ನು) ನೀವು ನೋಡಿದ್ದೀರಾ? | أَفَرَءَيْتُم مَّا تَحْرُثُونَ ٦٣ |
| 64. ಅದನ್ನು ನೀವು (ಸಸ್ಯವಾಗಿ) ಬೆಳೆಸುತ್ತೀರೋ? ಅಥವಾ ಬೆಳೆಸುವವರು ನಾವೋ? | ءَأَنتُمْ تَزْرَعُونَهُۥٓ أَمْ نَحْنُ ٱلزَّٰرِعُونَ ٦٤ |
| 65. ನಾವು ಇಚ್ಛಿಸಿದರೆ ಅದನ್ನು (ಸಸ್ಯವನ್ನು) ಕಸಕಡ್ಡಿಯಾಗಿ ಮಾಡುತ್ತಿದ್ದೆವು. ಆಗ ನೀವು ಅಚ್ಚರಿಯಿಂದ ಹೇಳುವಿರಿ: | لَوْ نَشَآءُ لَجَعَلْنَٰهُ حُطَٰمًا فَظَلْتُمْ تَفَكَّهُونَ ٦٥ |
| 66. "ನಾವು ನಷ್ಟದ ಹೊರೆಯನ್ನು ಹೊರಬೇಕಾಗಿ ಬಂದಿದೆ. | إِنَّا لَمُغْرَمُونَ ٦٦ |
| 67. ಅಲ್ಲ, ವಾಸ್ತವವಾಗಿ ನಮಗೆ ತಡೆಯಲಾಗಿದೆ." | بَلْ نَحْنُ مَحْرُومُونَ ٦٧ |
| 68. ನೀವು ಕುಡಿಯುವ ನೀರನ್ನು ನೀವು ನೋಡಿದ್ದೀರಾ? | أَفَرَءَيْتُمُ ٱلْمَآءَ ٱلَّذِى تَشْرَبُونَ ٦٨ |
| 69. ಅದನ್ನು ಮೋಡದಿಂದ ಸುರಿಸಿದವರು ನೀವೋ? ಅಥವಾ ಸುರಿಸುವವರು ನಾವೋ? | ءَأَنتُمْ أَنزَلْتُمُوهُ مِنَ ٱلْمُزْنِ أَمْ نَحْنُ ٱلْمُنزِلُونَ ٦٩ |
| 70. ನಾವು ಇಚ್ಛಿಸಿದರೆ ಅದನ್ನು ಕಹಿಯಾಗಿ ಮಾಡುತ್ತಿದ್ದೆವು. ಆದರೂ ನೀವು ಕೃತಜ್ಞರಾಗುವುದಿಲ್ಲವೇ? | لَوْ نَشَآءُ جَعَلْنَٰهُ أُجَاجًا فَلَوْلَا تَشْكُرُونَ ٧٠ |
| 71. ನೀವು ಉರಿಸುವ ಬೆಂಕಿಯನ್ನು ನೀವು ನೋಡಿದ್ದೀರಾ? | أَفَرَءَيْتُمُ ٱلنَّارَ ٱلَّتِى تُورُونَ ٧١ |
| 72. ಅದರ ಮರವನ್ನು ಸೃಷ್ಟಿಸಿದ್ದು ನೀವೋ? ಅಥವಾ ಸೃಷ್ಟಿಸುವವರು ನಾವೋ? | ءَأَنتُمْ أَنشَأْتُمْ شَجَرَتَهَآ أَمْ نَحْنُ ٱلْمُنشِـُٔونَ ٧٢ |
| 73. ನಾವು ಅದನ್ನೊಂದು ಉಪದೇಶವಾಗಿ ಮತ್ತು ಪ್ರಯಾಣಿಕರಿಗೆ ಸವಲತ್ತಾಗಿ ಮಾಡಿದ್ದೇವೆ.[1] | نَحْنُ جَعَلْنَٰهَا تَذْكِرَةً وَمَتَٰعًا لِّلْمُقْوِينَ ٧٣ |
| 74. ಆದ್ದರಿಂದ ನೀವು ಮಹತ್ವಪೂರ್ಣನಾದ ನಿಮ್ಮ ಪರಿಪಾಲಕನ (ಅಲ್ಲಾಹನ) ಹೆಸರನ್ನು (ಅವನ ಪರಿಶುದ್ಧತೆಯನ್ನು) ಕೊಂಡಾಡಿರಿ. | فَسَبِّحْ بِٱسْمِ رَبِّكَ ٱلْعَظِيمِ ٧٤ |
| 75. ನಾನು ನಕ್ಷತ್ರಗಳ ಅಸ್ತಮ ಸ್ಥಾನದ ಮೇಲೆ ಆಣೆ ಮಾಡಿ ಹೇಳುತ್ತೇನೆ. | فَلَآ أُقْسِمُ بِمَوَٰقِعِ ٱلنُّجُومِ ٧٥ |
| 76. ನೀವು ತಿಳಿದಿದ್ದರೆ ಅದು ಬಹಳ ದೊಡ್ಡ ಆಣೆಯಾಗಿದೆ. | وَإِنَّهُۥ لَقَسَمٌ لَّوْ تَعْلَمُونَ عَظِيمٌ ٧٦ |
| 77. ನಿಶ್ಚಯವಾಗಿಯೂ ಈ ಕುರ್‌ಆನ್ ಅತ್ಯಂತ ಆದರಣೀಯವಾಗಿದೆ. | إِنَّهُۥ لَقُرْءَانٌ كَرِيمٌ ٧٧ |
| 78. ಅದು ಭದ್ರವಾದ ಒಂದು ಗ್ರಂಥದಲ್ಲಿದೆ. | فِى كِتَٰبٍ مَّكْنُونٍ ٧٨ |

[1] ಹಿಂದಿನ ಕಾಲದಲ್ಲಿ ಜನರು ಮರುಭೂಮಿ ಮತ್ತು ಅಡವಿಗಳ ಮೂಲಕ ಪ್ರಯಾಣ ಮಾಡುತ್ತಿದ್ದರು. ರಾತ್ರಿ ವೇಳೆಯಲ್ಲಿ ಅವರು ಮರಗಳನ್ನು ಕಡಿದು ಬೆಂಕಿಯುರಿಸುತ್ತಿದ್ದರು. ಅವರು ಅದರಿಂದ ದೊಂದಿಗಳನ್ನು ತಯಾರಿಸುತ್ತಿದ್ದರು ಮತ್ತು ಚಳಿ ಕಾಯಿಸುತ್ತಿದ್ದರು. ವನ್ಯಮೃಗಗಳನ್ನು ದೂರವಿಡಲು ಕೂಡ ಅದು ಬಳಕೆಯಾಗುತ್ತಿತ್ತು.

79. ಅದನ್ನು ಪರಿಶುದ್ಧ ಜನರು (ದೇವದೂತರುಗಳು) ಮಾತ್ರ ಸ್ಪರ್ಶಿಸುತ್ತಾರೆ.[1] لَّا يَمَسُّهُۥٓ إِلَّا ٱلۡمُطَهَّرُونَ ﴿٧٩﴾

80. ಅದು ಸರ್ವಲೋಕಗಳ ಪರಿಪಾಲಕನಿಂದ (ಅಲ್ಲಾಹನಿಂದ) ಅವತೀರ್ಣವಾಗಿದೆ. تَنزِيلٞ مِّن رَّبِّ ٱلۡعَٰلَمِينَ ﴿٨٠﴾

81. ಹಾಗಾದರೆ ಈ ಮಾತುಗಳನ್ನು (ಕುರ್‌ಆನನ್ನು) ನೀವು ಅನಪೇಕ್ಷಿತವಾಗಿ ಸ್ವೀಕರಿಸುತ್ತೀರಾ? أَفَبِهَٰذَا ٱلۡحَدِيثِ أَنتُم مُّدۡهِنُونَ ﴿٨١﴾

82. ಸತ್ಯವನ್ನು ನಿಷೇಧಿಸುವುದನ್ನೇ ನಿಮ್ಮ (ಪರಿಪಾಲಕನು ಒದಗಿಸಿದ) ಉಪಜೀವನಕ್ಕೆ (ಕೃತಜ್ಞತೆಯಾಗಿ) ಮಾಡಿಕೊಳ್ಳುತ್ತೀರಾ? وَتَجۡعَلُونَ رِزۡقَكُمۡ أَنَّكُمۡ تُكَذِّبُونَ ﴿٨٢﴾

83. ಆದರೆ ಪ್ರಾಣವು ಗಂಟಲಿಗೆ ತಲುಪುವಾಗ, فَلَوۡلَآ إِذَا بَلَغَتِ ٱلۡحُلۡقُومَ ﴿٨٣﴾

84. ಆ ವೇಳೆಯಲ್ಲಿ ನೀವು ನೋಡುತ್ತಲೇ ಇರುವಿರಿ. وَأَنتُمۡ حِينَئِذٖ تَنظُرُونَ ﴿٨٤﴾

85. ನಾವು ಆ ವ್ಯಕ್ತಿಗೆ ನಿಮಗಿಂತಲೂ ಹೆಚ್ಚು ಹತ್ತಿರದಲ್ಲಿದ್ದೇವೆ. ಆದರೆ ನಿಮಗೆ ನೋಡಲು ಸಾಧ್ಯವಾಗುವುದಿಲ್ಲ. وَنَحۡنُ أَقۡرَبُ إِلَيۡهِ مِنكُمۡ وَلَٰكِن لَّا تُبۡصِرُونَ ﴿٨٥﴾

86. ನೀವು ಇನ್ನೊಬ್ಬರ (ಅಲ್ಲಾಹನ) ಆಜ್ಞೆಗೆ ವಿಧೇಯರಲ್ಲದಿದ್ದರೆ, فَلَوۡلَآ إِن كُنتُمۡ غَيۡرَ مَدِينِينَ ﴿٨٦﴾

87. ಆ ಪ್ರಾಣವನ್ನು ಮರಳಿ ಪಡೆಯಬಾರದೇಕೆ? ನೀವು ಸತ್ಯವನ್ನೇ ಹೇಳುತ್ತಿದ್ದರೆ. تَرۡجِعُونَهَآ إِن كُنتُمۡ صَٰدِقِينَ ﴿٨٧﴾

88. ಅವನು (ಮೃತನು) ಅಲ್ಲಾಹನ ಸಾಮೀಪ್ಯ ಪಡೆದವರಲ್ಲಿ ಸೇರಿದ್ದರೆ, فَأَمَّآ إِن كَانَ مِنَ ٱلۡمُقَرَّبِينَ ﴿٨٨﴾

89. ಅವನಿಗೆ ನೆಮ್ಮದಿ, ವಿಶಿಷ್ಟ ಆಹಾರ ಮತ್ತು ಅನುಗ್ರಹಪೂರ್ಣ ಸ್ವರ್ಗವಿದೆ. فَرَوۡحٞ وَرَيۡحَانٞ وَجَنَّتُ نَعِيمٖ ﴿٨٩﴾

90. ಅವನು ಬಲಭಾಗದ ಜನರಲ್ಲಿ ಸೇರಿದವನಾಗಿದ್ದರೆ, وَأَمَّآ إِن كَانَ مِنۡ أَصۡحَٰبِ ٱلۡيَمِينِ ﴿٩٠﴾

91. (ಅವನೊಡನೆ ಹೇಳಲಾಗುವುದು): "ನೀನು ಬಲಭಾಗದ ಜನರಲ್ಲಿ ಸೇರಿದ್ದರಿಂದ ನಿನಗೆ ಸುರಕ್ಷೆಯಿದೆ." فَسَلَٰمٞ لَّكَ مِنۡ أَصۡحَٰبِ ٱلۡيَمِينِ ﴿٩١﴾

92. ಆದರೆ ಅವನು ಸತ್ಯನಿಷೇಧಿಗಳಲ್ಲಿ ಮತ್ತು ದುರ್ಮಾರ್ಗಿಗಳಲ್ಲಿ ಸೇರಿದವನಾಗಿದ್ದರೆ, وَأَمَّآ إِن كَانَ مِنَ ٱلۡمُكَذِّبِينَ ٱلضَّآلِّينَ ﴿٩٢﴾

93. ಅವನಿಗೆ ಕುದಿಯುವ ನೀರಿನ ಸತ್ಕಾರವಿದೆ. فَنُزُلٞ مِّنۡ حَمِيمٖ ﴿٩٣﴾

[1] ಅಂದರೆ ಲೌಹುಲ್ ಮಹ್ಫೂಳ್ (ಸುರಕ್ಷಿತ ಫಲಕ) ನಲ್ಲಿರುವ ಪವಿತ್ರ ಕುರ್‌ಆನನ್ನು ದೇವದೂತರುಗಳು ಮಾತ್ರ ಸ್ಪರ್ಶಿಸುತ್ತಾರೆ. ಕುರ್‌ಆನನ್ನು ಆಕಾಶಲೋಕದಿಂದ ಶೈತಾನರು ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರಿಗೆ ತಂದು ಕೊಡುತ್ತಿದ್ದಾರೆಂದು ಸತ್ಯನಿಷೇಧಿಗಳು ಅಪಪ್ರಚಾರ ಮಾಡುತ್ತಿದ್ದರು. ಇದಕ್ಕೆ ಉತ್ತರವಾಗಿ ಈ ವಚನವು ಅವತೀರ್ಣವಾಯಿತು. ಶೈತಾನರಿಗೆ ಕುರ್‌ಆನನ್ನು ತರಲು ಸಾಧ್ಯವಿಲ್ಲ. ಏಕೆಂದರೆ ಅದು ಅತ್ಯಂತ ಭದ್ರತೆಯಲ್ಲಿದೆ. ದೇವದೂತರುಗಳ ಹೊರತು ಬೇರೆ ಯಾರಿಗೂ ಅದನ್ನು ಸ್ಪರ್ಶಿಸುವ ಅಧಿಕಾರವಿಲ್ಲ.

| | |
|---|---|
| 94. ನರಕಾಗ್ನಿಗೆ ಪ್ರವೇಶವಿದೆ. | وَتَصۡلِيَةُ جَحِيمٍ ﴿٩٤﴾ |
| 95. ನಿಶ್ಚಯವಾಗಿಯೂ ಇದು ಖಚಿತವಾದ ಸತ್ಯವಾಗಿದೆ. | إِنَّ هَٰذَا لَهُوَ حَقُّ ٱلۡيَقِينِ ﴿٩٥﴾ |
| 96. ಆದ್ದರಿಂದ ಮಹತ್ವಪೂರ್ಣನಾದ ನಿಮ್ಮ ಪರಿಪಾಲಕನ (ಅಲ್ಲಾಹನ) ಹೆಸರನ್ನು (ಅವನ ಪರಿಶುದ್ಧತೆಯನ್ನು) ಕೊಂಡಾಡಿರಿ. | فَسَبِّحۡ بِٱسۡمِ رَبِّكَ ٱلۡعَظِيمِ ﴿٩٦﴾ |

# 57. ಅಲ್-ಹದೀದ್

| | |
|---|---|
| ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. ಭೂಮ್ಯಾಕಾಶಗಳಲ್ಲಿರುವುದೆಲ್ಲವೂ ಅಲ್ಲಾಹನ ಪರಿಶುದ್ಧಿಯನ್ನು ಕೊಂಡಾಡುತ್ತಿವೆ. ಅವನು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ. | سَبَّحَ لِلَّهِ مَا فِي ٱلسَّمَٰوَٰتِ وَٱلۡأَرۡضِۖ وَهُوَ ٱلۡعَزِيزُ ٱلۡحَكِيمُ ﴿١﴾ |
| 2. ಭೂಮ್ಯಾಕಾಶಗಳ ಸಾರ್ವಭೌಮತ್ವವು ಅವನಿಗೆ ಸೇರಿದ್ದು. ಅವನು ಜೀವ ಮತ್ತು ಮರಣವನ್ನು ನೀಡುತ್ತಾನೆ. ಅವನು ಎಲ್ಲ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ. | لَهُۥ مُلۡكُ ٱلسَّمَٰوَٰتِ وَٱلۡأَرۡضِۖ يُحۡيِۦ وَيُمِيتُۖ وَهُوَ عَلَىٰ كُلِّ شَيۡءٖ قَدِيرٌ ﴿٢﴾ |
| 3. ಅವನೇ ಆದಿ, ಅಂತ್ಯ, ಪ್ರತ್ಯಕ್ಷ ಮತ್ತು ಪರೋಕ್ಷನು. ಅವನು ಸರ್ವ ವಿಷಯಗಳನ್ನು ತಿಳಿದವನಾಗಿದ್ದಾನೆ.[1] | هُوَ ٱلۡأَوَّلُ وَٱلۡأٓخِرُ وَٱلظَّٰهِرُ وَٱلۡبَاطِنُۖ وَهُوَ بِكُلِّ شَيۡءٍ عَلِيمٌ ﴿٣﴾ |
| 4. ಅವನೇ ಭೂಮ್ಯಾಕಾಶಗಳನ್ನು ಆರು ದಿನಗಳಲ್ಲಿ ಸೃಷ್ಟಿಸಿದವನು. ನಂತರ ಅವನು ಸಿಂಹಾಸನದಲ್ಲಿ ಆರೂಢನಾದನು. ಭೂಮಿಯನ್ನು ಪ್ರವೇಶಿಸುವ, ಭೂಮಿಯಿಂದ ಹೊರಬರುವ, ಆಕಾಶದಿಂದ ಇಳಿಯುವ ಮತ್ತು ಆಕಾಶಕ್ಕೇರುವ ಎಲ್ಲವನ್ನೂ ಅವನು ತಿಳಿಯುತ್ತಾನೆ. ನೀವೆಲ್ಲೇ ಇದ್ದರೂ ಅವನು ನಿಮ್ಮ ಜೊತೆ-ಯಲ್ಲಿದ್ದಾನೆ.[2] ಅಲ್ಲಾಹು ನೀವು ಮಾಡುವ ಕರ್ಮಗಳನ್ನು ನೋಡುತ್ತಿದ್ದಾನೆ. | هُوَ ٱلَّذِي خَلَقَ ٱلسَّمَٰوَٰتِ وَٱلۡأَرۡضَ فِي سِتَّةِ أَيَّامٖ ثُمَّ ٱسۡتَوَىٰ عَلَى ٱلۡعَرۡشِۖ يَعۡلَمُ مَا يَلِجُ فِي ٱلۡأَرۡضِ وَمَا يَخۡرُجُ مِنۡهَا وَمَا يَنزِلُ مِنَ ٱلسَّمَآءِ وَمَا يَعۡرُجُ فِيهَاۖ وَهُوَ مَعَكُمۡ أَيۡنَ مَا كُنتُمۡۚ وَٱللَّهُ بِمَا تَعۡمَلُونَ بَصِيرٞ ﴿٤﴾ |
| 5. ಭೂಮ್ಯಾಕಾಶಗಳ ಸಾರ್ವಭೌಮತ್ವವು ಅವನಿಗೆ ಸೇರಿದ್ದು. ಎಲ್ಲಾ ವಿಷಯಗಳೂ ಅಲ್ಲಾಹನ ಬಳಿಗೆ ಮರಳುತ್ತವೆ. | لَّهُۥ مُلۡكُ ٱلسَّمَٰوَٰتِ وَٱلۡأَرۡضِۚ وَإِلَى ٱللَّهِ تُرۡجَعُ ٱلۡأُمُورُ ﴿٥﴾ |
| 6. ಅವನು ರಾತ್ರಿಯನ್ನು ಹಗಲಿನಲ್ಲಿ ತೂರಿಸುತ್ತಾನೆ ಮತ್ತು ಹಗಲನ್ನು | يُولِجُ ٱلَّيۡلَ فِي ٱلنَّهَارِ وَيُولِجُ ٱلنَّهَارَ فِي ٱلَّيۡلِۚ |

[1] ಅವನು ಆದಿ—ಅಂದರೆ ಅವನಿಗಿಂತ ಮೊದಲು ಏನೂ ಇಲ್ಲ. ಅವನು ಅಂತ್ಯ—ಅಂದರೆ ಅವನ ನಂತರ ಏನೂ ಇಲ್ಲ. ಅವನು ಪ್ರತ್ಯಕ್ಷ—ಅಂದರೆ ಅವನಿಗಿಂತ ಮೇಲೆ ಏನೂ ಇಲ್ಲ. ಅವನು ಎಲ್ಲಕ್ಕಿಂತ ಮೇಲಿರುವವನು, ಎಲ್ಲದ ಮೇಲೆ ಪ್ರಾಬಲ್ಯವಿರುವವನು. ಅವನು ಪರೋಕ್ಷ—ಅಂದರೆ ಅವನು ಪರೋಕ್ಷವಾಗಿರುವ, ರಹಸ್ಯವಾಗಿರುವ ಎಲ್ಲವನ್ನೂ ತಿಳಿಯುತ್ತಾನೆ. ಅವನು ದೃಷ್ಟಿಗಳಿಂದ ಮತ್ತು ಬುದ್ಧಿಯಿಂದ ಮರೆಯಾಗಿದ್ದಾನೆ.

[2] ಅಂದರೆ ನಿಮ್ಮ ಎಲ್ಲಾ ಚಲನವಲನಗಳನ್ನು ಅವನು ಗಮನಿಸುತ್ತಿದ್ದಾನೆ.

ರಾತ್ರಿಯಲ್ಲಿ ತೂರಿಸುತ್ತಾನೆ. ಅವನು ಎದೆಗಳ ಒಳಗಿರುವುದನ್ನು ತಿಳಿಯುತ್ತಾನೆ.

وَهُوَ عَلِيمٌۢ بِذَاتِ ٱلصُّدُورِ ٦

---

7. ನೀವು ಅಲ್ಲಾಹನಲ್ಲಿ ಮತ್ತು ಅವನ ಸಂದೇಶವಾಹಕ-ರಲ್ಲಿ ವಿಶ್ವಾಸವಿಡಿರಿ. ಯಾವ ಆಸ್ತಿಗೆ ಅವನು ನಿಮ್ಮನ್ನು ವಾರಸುದಾರರಾಗಿ ಮಾಡಿದ್ದಾನೋ ಆ ಧನದಿಂದ (ಅಲ್ಲಾಹನ ಮಾರ್ಗದಲ್ಲಿ) ಖರ್ಚು ಮಾಡಿರಿ. ನಿಮ್ಮಲ್ಲಿ ಯಾರು ವಿಶ್ವಾಸವಿ-ಡುತ್ತಾರೋ ಮತ್ತು ಖರ್ಚು ಮಾಡುತ್ತಾರೋ ಅವರಿಗೆ ಮಹಾ ಪ್ರತಿಫಲವಿದೆ.

ءَامِنُوا۟ بِٱللَّهِ وَرَسُولِهِۦ وَأَنفِقُوا۟ مِمَّا جَعَلَكُم
مُّسْتَخْلَفِينَ فِيهِ ۖ فَٱلَّذِينَ ءَامَنُوا۟ مِنكُمْ
وَأَنفَقُوا۟ لَهُمْ أَجْرٌ كَبِيرٌ ٧

---

8. ನೀವೇಕೆ ಅಲ್ಲಾಹನಲ್ಲಿ ವಿಶ್ವಾಸವಿಡುವುದಿಲ್ಲ? ನೀವು ನಿಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ವಿಶ್ವಾಸವಿಡಬೇಕೆಂದು ಸಂದೇಶವಾಹಕರು ನಿಮ್ಮನ್ನು ಕರೆಯುತ್ತಿದ್ದಾರೆ. ಅಲ್ಲಾಹು ನಿಮ್ಮಿಂದ ಕರಾರು ಪಡೆದಿದ್ದಾನೆ. ನೀವು ವಿಶ್ವಾಸಿಗಳಾಗಿದ್ದರೆ.

وَمَا لَكُمْ لَا تُؤْمِنُونَ بِٱللَّهِ ۙ وَٱلرَّسُولُ يَدْعُوكُمْ
لِتُؤْمِنُوا۟ بِرَبِّكُمْ وَقَدْ أَخَذَ مِيثَٰقَكُمْ إِن
كُنتُم مُّؤْمِنِينَ ٨

---

9. ಅವನೇ ನಿಮ್ಮನ್ನು ಕತ್ತಲೆಗಳಿಂದ ಬೆಳಕಿಗೆ ತರುವುದಕ್ಕಾಗಿ ತನ್ನ ದಾಸನ ಮೇಲೆ ಸ್ಪಷ್ಟ ವಚನಗಳನ್ನು ಅವತೀರ್ಣಗೊಳಿಸುವವನು. ನಿಶ್ಚಯವಾಗಿಯೂ ಅಲ್ಲಾಹು ನಿಮ್ಮ ಮೇಲೆ ಅಪಾರ ಅನುಕಂಪ ಮತ್ತು ದಯೆ ತೋರುವವನಾಗಿದ್ದಾನೆ.

هُوَ ٱلَّذِى يُنَزِّلُ عَلَىٰ عَبْدِهِۦٓ ءَايَٰتٍۭ بَيِّنَٰتٍ
لِّيُخْرِجَكُم مِّنَ ٱلظُّلُمَٰتِ إِلَى ٱلنُّورِ ۚ وَإِنَّ ٱللَّهَ
بِكُمْ لَرَءُوفٌ رَّحِيمٌ ٩

---

10. ಅಲ್ಲಾಹನ ಮಾರ್ಗದಲ್ಲಿ ಖರ್ಚು ಮಾಡದಿರಲು ನಿಮಗೇನಾಗಿದೆ? ವಾಸ್ತವವಾಗಿ ಭೂಮ್ಯಾಕಾಶಗಳ ಉತ್ತರಾಧಿಕಾರದ ಹಕ್ಕು ಅಲ್ಲಾಹನಿಗೆ ಸೇರಿದ್ದು. ನಿಮ್ಮಲ್ಲಿ ಮಕ್ಕಾ ವಿಜಯಕ್ಕೆ ಮೊದಲು (ಅಲ್ಲಾಹನ ಮಾರ್ಗದಲ್ಲಿ) ಖರ್ಚು ಮಾಡಿದವರು ಮತ್ತು ಯುದ್ಧ ಮಾಡಿದವರು ಇತರರಿಗೆ ಸಮಾನರಾಗುವುದಿಲ್ಲ. ಇವರಿಗೆ ಮಕ್ಕಾ ವಿಜಯದ ನಂತರ ಖರ್ಚು ಮಾಡಿದವರು ಮತ್ತು ಯುದ್ಧ ಮಾಡಿದವರಿಗಿಂತಲೂ ಶ್ರೇಷ್ಠ ಸ್ಥಾನಮಾನಗಳಿವೆ. ಅಲ್ಲಾಹು ಎಲ್ಲರಿಗೂ ಒಳಿತನ್ನು ವಾಗ್ದಾನ ಮಾಡಿದ್ದಾನೆ. ಅಲ್ಲಾಹು ನೀವು ಮಾಡುವ ಕರ್ಮಗಳ ಬಗ್ಗೆ ಸೂಕ್ಷ್ಮಜ್ಞಾನವುಳ್ಳವನಾಗಿದ್ದಾನೆ.

وَمَا لَكُمْ أَلَّا تُنفِقُوا۟ فِى سَبِيلِ ٱللَّهِ وَلِلَّهِ
مِيرَٰثُ ٱلسَّمَٰوَٰتِ وَٱلْأَرْضِ ۚ لَا يَسْتَوِى مِنكُم
مَّنْ أَنفَقَ مِن قَبْلِ ٱلْفَتْحِ وَقَٰتَلَ ۚ أُو۟لَٰٓئِكَ
أَعْظَمُ دَرَجَةً مِّنَ ٱلَّذِينَ أَنفَقُوا۟ مِنۢ بَعْدُ
وَقَٰتَلُوا۟ ۚ وَكُلًّا وَعَدَ ٱللَّهُ ٱلْحُسْنَىٰ ۚ وَٱللَّهُ بِمَا
تَعْمَلُونَ خَبِيرٌ ١٠

---

11. ಅಲ್ಲಾಹನಿಗೆ ಉತ್ತಮ ಸಾಲ ಕೊಡುವವನು ಯಾರು? ಹಾಗಾದರೆ ಅಲ್ಲಾಹು ಅವನಿಗೆ ಅದನ್ನು ಹಲವು ಪಟ್ಟು ದ್ವಿಗುಣಗೊಳಿ-ಸುವನು. ಅವನಿಗೆ ಮನದಣಿಯುವ ಪ್ರತಿಫಲವೂ ಇದೆ.

مَّن ذَا ٱلَّذِى يُقْرِضُ ٱللَّهَ قَرْضًا حَسَنًا
فَيُضَٰعِفَهُۥ لَهُۥ وَلَهُۥٓ أَجْرٌ كَرِيمٌ ١١

---

12. ನೀವು ಸತ್ಯವಿಶ್ವಾಸಿ ಪುರುಷರು ಮತ್ತು ಮಹಿಳೆಯರ ಬೆಳಕು ಅವರ ಮುಂಭಾಗದಿಂದ ಮತ್ತು ಬಲಭಾಗದಿಂದ ಹೊರಹೊಮ್ಮುವುದನ್ನು ನೋಡುವ ದಿನ. (ಅವರೊಡನೆ

يَوْمَ تَرَى ٱلْمُؤْمِنِينَ وَٱلْمُؤْمِنَٰتِ يَسْعَىٰ نُورُهُم
بَيْنَ أَيْدِيهِمْ وَبِأَيْمَٰنِهِم بُشْرَىٰكُمُ ٱلْيَوْمَ
جَنَّٰتٌ تَجْرِى مِن تَحْتِهَا ٱلْأَنْهَٰرُ خَٰلِدِينَ فِيهَا ۚ

ذَٰلِكَ هُوَ ٱلْفَوْزُ ٱلْعَظِيمُ ﴿١٢﴾

ಹೇಳಲಾಗುವುದು): "ಇಂದು ನಿಮಗೆ ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳ ಸುವಾರ್ತೆಯಿದೆ. ನೀವು ಅವುಗಳಲ್ಲಿ ಶಾಶ್ವತವಾಗಿ ವಾಸಿಸುವಿರಿ." ಅದೇ ಅತಿದೊಡ್ಡ ವಿಜಯ.

---

يَوْمَ يَقُولُ ٱلْمُنَٰفِقُونَ وَٱلْمُنَٰفِقَٰتُ لِلَّذِينَ ءَامَنُوا۟ ٱنظُرُونَا نَقْتَبِسْ مِن نُّورِكُمْ قِيلَ ٱرْجِعُوا۟ وَرَآءَكُمْ فَٱلْتَمِسُوا۟ نُورًا فَضُرِبَ بَيْنَهُم بِسُورٍ لَّهُۥ بَابٌۢ بَاطِنُهُۥ فِيهِ ٱلرَّحْمَةُ وَظَٰهِرُهُۥ مِن قِبَلِهِ ٱلْعَذَابُ ﴿١٣﴾

13. ಆ ದಿನ ಕಪಟವಿಶ್ವಾಸಿ ಪುರುಷರು ಮತ್ತು ಮಹಿಳೆಯರು ಸತ್ಯ-ವಿಶ್ವಾಸಿಗಳೊಡನೆ ಹೇಳುವರು: "ಸ್ವಲ್ಪ ತಡೆದುಕೊಳ್ಳಿರಿ. ನಾವು ಕೂಡ ನಿಮ್ಮ ಬೆಳಕಿನಿಂದ ಸ್ವಲ್ಪ ಬೆಳಕನ್ನು ಪಡೆಯುತ್ತೇವೆ." ಅವರೊಡನೆ ಹೇಳಲಾಗುವುದು: "ನೀವು ಹಿಂದಕ್ಕೆ ಹೋಗಿ ನಿಮ್ಮ ಬೆಳಕನ್ನು ಹುಡುಕಿರಿ." ಅವರ ನಡುವೆ ಒಂದು ಗೋಡೆಯನ್ನು ಅಡ್ಡವಾಗಿ ನಿಲ್ಲಿಸಲಾಗುವುದು. ಅದಕ್ಕೊಂದು ಬಾಗಿಲಿರುವುದು ಮತ್ತು ಅದರ ಒಳಭಾಗದಲ್ಲಿ ದಯೆ ಹಾಗೂ ಹೊರಭಾಗದಲ್ಲಿ ಶಿಕ್ಷೆಯಿರುವುದು.

---

يُنَادُونَهُمْ أَلَمْ نَكُن مَّعَكُمْ قَالُوا۟ بَلَىٰ وَلَٰكِنَّكُمْ فَتَنتُمْ أَنفُسَكُمْ وَتَرَبَّصْتُمْ وَٱرْتَبْتُمْ وَغَرَّتْكُمُ ٱلْأَمَانِىُّ حَتَّىٰ جَآءَ أَمْرُ ٱللَّهِ وَغَرَّكُم بِٱللَّهِ ٱلْغَرُورُ ﴿١٤﴾

14. ಕಪಟವಿಶ್ವಾಸಿಗಳು ಸತ್ಯವಿಶ್ವಾಸಿಗಳನ್ನು ಕೂಗಿ ಕರೆಯುತ್ತಾ ಕೇಳುವರು: "ನಾವು ನಿಮ್ಮ ಜೊತೆಯಲ್ಲಿರಲಿಲ್ಲವೇ?" ಅವರು ಉತ್ತರಿಸುವರು: "ಹೌದು! ಆದರೆ ನೀವು ನಿಮ್ಮನ್ನೇ ಕ್ಷೋಭೆಗೆ ತಳ್ಳಿದ್ದಿರಿ ಮತ್ತು (ನಮಗೆ ಅನಾಹುತ ಸಂಭವಿಸುವುದನ್ನು) ಕಾಯುತ್ತಿದ್ದಿರಿ. ನೀವು ಸಂಶಯಪಡುತ್ತಿದ್ದಿರಿ. ನಿಮ್ಮ ಹುಸಿ ವ್ಯಾಮೋಹಗಳು ನಿಮ್ಮನ್ನು ಮರುಳುಗೊಳಿಸಿದವು. ಎಲ್ಲಿಯವ-ರೆಗೆಂದರೆ ಅಲ್ಲಾಹನ ಆಜ್ಞೆ ಬರುವವರೆಗೆ. ಆ ನಯವಂಚಕನು (ಶೈತಾನನು) ನಿಮ್ಮನ್ನು ಅಲ್ಲಾಹನ ವಿಷಯದಲ್ಲಿ ವಂಚಿಸಿಬಿಟ್ಟನು.

---

فَٱلْيَوْمَ لَا يُؤْخَذُ مِنكُمْ فِدْيَةٌ وَلَا مِنَ ٱلَّذِينَ كَفَرُوا۟ مَأْوَىٰكُمُ ٱلنَّارُ هِىَ مَوْلَىٰكُمْ وَبِئْسَ ٱلْمَصِيرُ ﴿١٥﴾

15. ಆದ್ದರಿಂದ ಇಂದು ನಿಮ್ಮಿಂದ ಅಥವಾ ಸತ್ಯನಿಷೇಧಿಗಳಿಂದ ಯಾವುದೇ ಪರಿಹಾರ ಸ್ವೀಕರಿಸಲಾಗುವುದಿಲ್ಲ. ನಿಮ್ಮ ವಾಸಸ್ಥಳವು ನರಕಾಗ್ನಿಯಾಗಿದೆ. ಅದೇ ನಿಮ್ಮ ಗೆಳೆಯ. ಆ ಗಮ್ಯಸ್ಥಾನವು ಬಹಳ ನಿಕೃಷ್ಟವಾಗಿದೆ.

---

أَلَمْ يَأْنِ لِلَّذِينَ ءَامَنُوٓا۟ أَن تَخْشَعَ قُلُوبُهُمْ لِذِكْرِ ٱللَّهِ وَمَا نَزَلَ مِنَ ٱلْحَقِّ وَلَا يَكُونُوا۟ كَٱلَّذِينَ أُوتُوا۟ ٱلْكِتَٰبَ مِن قَبْلُ فَطَالَ عَلَيْهِمُ ٱلْأَمَدُ فَقَسَتْ قُلُوبُهُمْ وَكَثِيرٌ مِّنْهُمْ فَٰسِقُونَ ﴿١٦﴾

16. ಅಲ್ಲಾಹನ ಸ್ಮರಣೆಯಿಂದ ಹಾಗೂ ಅವತೀರ್ಣವಾದ ಸತ್ಯಸಂದೇಶದಿಂದ ಹೃದಯಗಳು ಮೃದುವಾಗಲು ಮತ್ತು ಇದಕ್ಕೆ ಮೊದಲು ಗ್ರಂಥ ನೀಡಲಾದವರಂತೆ (ಯಹೂದಿ-ಕ್ರೈಸ್ತರಂತೆ) ಆಗದಿರಲು ಸತ್ಯವಿಶ್ವಾಸಿಗಳಿಗೆ ಈಗಲೂ ಕೂಡ ಸಮಯವಾಗ-ಲಿಲ್ಲವೇ? ಅವರ ಮುಖಾಂತರ ಒಂದು ದೀರ್ಘ ಅವಧಿಯು ಹಾದುಹೋದಾಗ ಅವರ ಹೃದಯಗಳು ಕಠೋರವಾದವು. ಅವರಲ್ಲಿ ಹೆಚ್ಚಿನವರು ದುಷ್ಕರ್ಮಿಗಳಾಗಿದ್ದರು.

---

ٱعْلَمُوٓا۟ أَنَّ ٱللَّهَ يُحْىِ ٱلْأَرْضَ بَعْدَ مَوْتِهَا قَدْ

17. ತಿಳಿಯಿರಿ! ನಿಶ್ಚಯವಾಗಿಯೂ ಅಲ್ಲಾಹು ಭೂಮಿಯನ್ನು—ಅದು

ನಿರ್ಜೀವವಾದ ನಂತರ—ಜೀವಂತಗೊಳಿಸುತ್ತಾನೆ. ನೀವು ಆಲೋಚಿಸುವುದಕ್ಕಾಗಿ ನಾವು ನಿಮಗೆ ಈಗಾಗಲೇ ದೃಷ್ಟಾಂತಗಳನ್ನು ವಿವರಿಸಿಕೊಟ್ಟಿದ್ದೇವೆ.

بَيَّنَّا لَكُمُ ٱلْـَٔايَٰتِ لَعَلَّكُمْ تَعْقِلُونَ ﴿١٧﴾

---

18. ನಿಶ್ಚಯವಾಗಿಯೂ ದಾನಧರ್ಮ ಮಾಡುವ ಪುರುಷರು ಮತ್ತು ಮಹಿಳೆಯರು ಹಾಗೂ ಅಲ್ಲಾಹನಿಗೆ ಉತ್ತಮ ಸಾಲವನ್ನು ಕೊಡುವವರು ಯಾರೋ—ಅವರಿಗೆ ಅದನ್ನು ಹಲವು ಪಟ್ಟು ದ್ವಿಗುಣಗೊಳಿಸಲಾಗುವುದು. ಅವರಿಗೆ ಮನದಣಿಯುವ ಪ್ರತಿಫಲವಿರುವುದು.

إِنَّ ٱلْمُصَّدِّقِينَ وَٱلْمُصَّدِّقَٰتِ وَأَقْرَضُوا۟ ٱللَّهَ قَرْضًا حَسَنًا يُضَٰعَفُ لَهُمْ وَلَهُمْ أَجْرٌ كَرِيمٌ ﴿١٨﴾

---

19. ಅಲ್ಲಾಹನಲ್ಲಿ ಮತ್ತು ಅವನ ಸಂದೇಶವಾಹಕರಲ್ಲಿ ವಿಶ್ವಾಸವಿಟ್ಟವರು ಯಾರೋ ಅವರೇ ತಮ್ಮ ಪರಿಪಾಲಕನ (ಅಲ್ಲಾಹನ) ಬಳಿ ಸತ್ಯವಂತರು ಮತ್ತು ಹುತಾತ್ಮರು. ಅವರಿಗೆ ಅವರ ಪ್ರತಿಫಲ ಮತ್ತು ಬೆಳಕಿದೆ. ಸತ್ಯವನ್ನು ನಿಷೇಧಿಸಿದವರು ಮತ್ತು ನಮ್ಮ ವಚನಗಳನ್ನು ನಿಷೇಧಿಸಿದವರು ಯಾರೋ ಅವರೇ ನರಕವಾಸಿಗಳು.

وَٱلَّذِينَ ءَامَنُوا۟ بِٱللَّهِ وَرُسُلِهِۦٓ أُو۟لَٰٓئِكَ هُمُ ٱلصِّدِّيقُونَ ۖ وَٱلشُّهَدَآءُ عِندَ رَبِّهِمْ لَهُمْ أَجْرُهُمْ وَنُورُهُمْ ۖ وَٱلَّذِينَ كَفَرُوا۟ وَكَذَّبُوا۟ بِـَٔايَٰتِنَآ أُو۟لَٰٓئِكَ أَصْحَٰبُ ٱلْجَحِيمِ ﴿١٩﴾

---

20. ತಿಳಿಯಿರಿ! ಇಹಲೋಕ ಜೀವನವೆಂದರೆ ಆಟ, ಮನೋರಂಜನೆ, ಶೃಂಗಾರ, ಪರಸ್ಪರ ಅಹಂಭಾವ ತೋರುವುದು, ಆಸ್ತಿ ಮತ್ತು ಮಕ್ಕಳ ವಿಷಯದಲ್ಲಿ ಪರಸ್ಪರ ಜಂಭಕೊಚ್ಚುವುದು ಮಾತ್ರವಾಗಿದೆ. ಅದೊಂದು ಮಳೆಯಂತೆ. ಆ ಮಳೆಯಿಂದಾಗಿ ಬೆಳೆಯುವ ಸಸ್ಯಗಳು ರೈತರನ್ನು ಸಂತೋಷಗೊಳಿಸಿದವು. ನಂತರ ಅದು ಒಣಗಿ ಹಳದಿ ಬಣ್ಣವಾಗುವುದನ್ನು ನೀವು ನೋಡುತ್ತೀರಿ. ನಂತರ ಅದು ಕಸಕಡ್ಡಿಯಾಗಿ ಮಾರ್ಪಡುತ್ತದೆ. ಪರಲೋಕದಲ್ಲಿ ಕಠೋರ ಶಿಕ್ಷೆಯಿದೆ ಮತ್ತು ಅಲ್ಲಾಹನ ಕಡೆಯ ಕ್ಷಮೆ ಮತ್ತು ಸಂಪ್ರೀತಿಯಿದೆ. ಇಹಲೋಕ ಜೀವನವು ಮರುಳುಗೊಳಿಸುವ ಆನಂದವಲ್ಲದೆ ಬೇರೇನೂ ಅಲ್ಲ.

ٱعْلَمُوٓا۟ أَنَّمَا ٱلْحَيَوٰةُ ٱلدُّنْيَا لَعِبٌ وَلَهْوٌ وَزِينَةٌ وَتَفَاخُرٌۢ بَيْنَكُمْ وَتَكَاثُرٌ فِى ٱلْأَمْوَٰلِ وَٱلْأَوْلَٰدِ ۖ كَمَثَلِ غَيْثٍ أَعْجَبَ ٱلْكُفَّارَ نَبَاتُهُۥ ثُمَّ يَهِيجُ فَتَرَىٰهُ مُصْفَرًّا ثُمَّ يَكُونُ حُطَٰمًا ۖ وَفِى ٱلْـَٔاخِرَةِ عَذَابٌ شَدِيدٌ وَمَغْفِرَةٌ مِّنَ ٱللَّهِ وَرِضْوَٰنٌ ۚ وَمَا ٱلْحَيَوٰةُ ٱلدُّنْيَآ إِلَّا مَتَٰعُ ٱلْغُرُورِ ﴿٢٠﴾

---

21. ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಕ್ಷಮೆಗಾಗಿ ಮತ್ತು ಭೂಮ್ಯಾಕಾಶಗಳಷ್ಟು ವಿಸ್ತಾರವಾದ ಸ್ವರ್ಗಕ್ಕಾಗಿ ಧಾವಂತದಿಂದ ಬನ್ನಿರಿ. ಅಲ್ಲಾಹು ಮತ್ತು ಅವನ ಸಂದೇಶವಾಹಕರಲ್ಲಿ ವಿಶ್ವಾಸವಿಟ್ಟವರಿಗೋಸ್ಕರ ಅದನ್ನು ಸಿದ್ಧಗೊಳಿಸಲಾಗಿದೆ. ಅದು ಅಲ್ಲಾಹನ ಔದಾರ್ಯವಾಗಿದ್ದು ಅವನು ಇಚ್ಛಿಸುವವರಿಗೆ ಅದನ್ನು ನೀಡುತ್ತಾನೆ. ಅಲ್ಲಾಹು ಮಹಾ ಔದಾರ್ಯವಂತನಾಗಿದ್ದಾನೆ.

سَابِقُوٓا۟ إِلَىٰ مَغْفِرَةٍ مِّن رَّبِّكُمْ وَجَنَّةٍ عَرْضُهَا كَعَرْضِ ٱلسَّمَآءِ وَٱلْأَرْضِ أُعِدَّتْ لِلَّذِينَ ءَامَنُوا۟ بِٱللَّهِ وَرُسُلِهِۦ ۚ ذَٰلِكَ فَضْلُ ٱللَّهِ يُؤْتِيهِ مَن يَشَآءُ ۚ وَٱللَّهُ ذُو ٱلْفَضْلِ ٱلْعَظِيمِ ﴿٢١﴾

---

22. ಭೂಲೋಕದಲ್ಲಿ ಅಥವಾ ಸ್ವಯಂ ನಿಮ್ಮ ದೇಹಗಳಲ್ಲಿ ಏನಾದರೂ ವಿಪತ್ತು ಸಂಭವಿಸುವುದಾದರೂ—ನಾವು ಅದನ್ನು ಅಸ್ತಿತ್ವಕ್ಕೆ

مَآ أَصَابَ مِن مُّصِيبَةٍ فِى ٱلْأَرْضِ وَلَا فِىٓ أَنفُسِكُمْ إِلَّا فِى كِتَٰبٍ مِّن قَبْلِ أَن نَّبْرَأَهَآ ۚ

إِنَّ ذَٰلِكَ عَلَى ٱللَّهِ يَسِيرٞ ٢٢

ತರುವ ಮೊದಲೇ ಅದು ಗ್ರಂಥದಲ್ಲಿ ದಾಖಲಾಗಿರುತ್ತದೆ. ಇದು ಅಲ್ಲಾಹನಿಗೆ ಬಹಳ ಸುಲಭದ ಕಾರ್ಯವಾಗಿದೆ.

---

لِّكَيۡلَا تَأۡسَوۡاْ عَلَىٰ مَا فَاتَكُمۡ وَلَا تَفۡرَحُواْ بِمَآ ءَاتَىٰكُمۡۗ وَٱللَّهُ لَا يُحِبُّ كُلَّ مُخۡتَالٖ فَخُورٍ ٢٣

23. ನಿಮ್ಮ ಕೈತಪ್ಪಿ ಹೋದ ವಿಷಯಕ್ಕಾಗಿ ನೀವು ನಿರಾಶರಾಗದಿರಲು ಮತ್ತು ಅಲ್ಲಾಹು ನಿಮಗೆ ದಯಪಾಲಿಸಿದ ವಿಷಯಕ್ಕಾಗಿ ನೀವು ಹಿರಿ ಹಿರಿ ಹಿಗ್ಗದಿರಲು. ಅಹಂಭಾವಿಗಳು ಮತ್ತು ಜಂಭಕೊಚ್ಚುವ-ವರನ್ನು ಅಲ್ಲಾಹು ಇಷ್ಟಪಡುವುದಿಲ್ಲ.

---

ٱلَّذِينَ يَبۡخَلُونَ وَيَأۡمُرُونَ ٱلنَّاسَ بِٱلۡبُخۡلِۗ وَمَن يَتَوَلَّ فَإِنَّ ٱللَّهَ هُوَ ٱلۡغَنِيُّ ٱلۡحَمِيدُ ٢٤

24. ಅವರು ಯಾರೆಂದರೆ, ಜಿಪುಣತನ ತೋರುವವರು ಮತ್ತು ಜಿಪುಣತನ ತೋರಲು ಜನರಿಗೆ ಕಲಿಸುವವರು. ಯಾರಾದರೂ (ಖರ್ಚು ಮಾಡಲು ಮುಂದಾಗದೆ) ಮುಖ ತಿರುಗಿಸಿ ನಡೆಯುತ್ತಾರೋ—ನಿಶ್ಚಯವಾಗಿಯೂ ಅಲ್ಲಾಹು ನಿರಪೇಕ್ಷನು ಮತ್ತು ಸ್ತುತ್ಯರ್ಹನಾಗಿದ್ದಾನೆ.

---

لَقَدۡ أَرۡسَلۡنَا رُسُلَنَا بِٱلۡبَيِّنَٰتِ وَأَنزَلۡنَا مَعَهُمُ ٱلۡكِتَٰبَ وَٱلۡمِيزَانَ لِيَقُومَ ٱلنَّاسُ بِٱلۡقِسۡطِۖ وَأَنزَلۡنَا ٱلۡحَدِيدَ فِيهِ بَأۡسٞ شَدِيدٞ وَمَنَٰفِعُ لِلنَّاسِ وَلِيَعۡلَمَ ٱللَّهُ مَن يَنصُرُهُۥ وَرُسُلَهُۥ بِٱلۡغَيۡبِۚ إِنَّ ٱللَّهَ قَوِيٌّ عَزِيزٞ ٢٥

25. ನಿಶ್ಚಯವಾಗಿಯೂ ನಾವು ನಮ್ಮ ಸಂದೇಶವಾಹಕರನ್ನು ಸ್ಪಷ್ಟ ಸಾಕ್ಷ್ಯಾಧಾರಗಳೊಂದಿಗೆ ಕಳುಹಿಸಿದ್ದೇವೆ ಮತ್ತು ಜನರು ನ್ಯಾಯದಲ್ಲಿ ನಿಲ್ಲುವುದಕ್ಕಾಗಿ ಅವರ ಜೊತೆಗೆ ಗ್ರಂಥ ಮತ್ತು ತಕ್ಕಡಿಯನ್ನು ಅವತೀರ್ಣಗೊಳಿಸಿದ್ದೇವೆ. ನಾವು ಕಬ್ಬಿಣವನ್ನು ಕೂಡ ಇಳಿಸಿದ್ದೇವೆ. ಅದರಲ್ಲಿ ಕಠೋರ ಶಕ್ತಿಯಿದೆ ಮತ್ತು ಜನರಿಗೆ ಪ್ರಯೋಜನಗಳೂ ಇವೆ. ಇವೆಲ್ಲವೂ ಅಲ್ಲಾಹು ಮತ್ತು ಅವನ ಸಂದೇಶವಾಹಕರಿಗೆ ಅದೃಶ್ಯ ರೀತಿಯಲ್ಲಿ ಸಹಾಯ ಮಾಡುವವರು ಯಾರು ಎಂದು ಅಲ್ಲಾಹು ತಿಳಿಯುವುದ-ಕ್ಕಾಗಿದೆ. ನಿಶ್ಚಯವಾಗಿಯೂ ಅಲ್ಲಾಹು ಮಹಾ ಶಕ್ತಿಶಾಲಿ ಮತ್ತು ಪ್ರಬಲನಾಗಿದ್ದಾನೆ.

---

وَلَقَدۡ أَرۡسَلۡنَا نُوحٗا وَإِبۡرَٰهِيمَ وَجَعَلۡنَا فِي ذُرِّيَّتِهِمَا ٱلنُّبُوَّةَ وَٱلۡكِتَٰبَۖ فَمِنۡهُم مُّهۡتَدٖۖ وَكَثِيرٞ مِّنۡهُمۡ فَٰسِقُونَ ٢٦

26. ನಾವು ನೂಹ್ ಮತ್ತು ಇಬ್ರಾಹೀಮರನ್ನು ಕಳುಹಿಸಿದೆವು. ಅವರ ಸಂತಾನ ಪರಂಪರೆಯಲ್ಲಿ ಪ್ರವಾದಿತ್ವ ಮತ್ತು ಗ್ರಂಥವನ್ನು ಸ್ಥಾಪಿಸಿದೆವು. ಅವರಲ್ಲಿ ಸನ್ಮಾರ್ಗ ಪಡೆದವರಿದ್ದಾರೆ. ಆದರೆ ಅವರಲ್ಲಿ ಹೆಚ್ಚಿನವರು ದುಷ್ಕರ್ಮಿಗಳಾಗಿದ್ದಾರೆ.

---

ثُمَّ قَفَّيۡنَا عَلَىٰٓ ءَاثَٰرِهِم بِرُسُلِنَا وَقَفَّيۡنَا بِعِيسَى ٱبۡنِ مَرۡيَمَ وَءَاتَيۡنَٰهُ ٱلۡإِنجِيلَۖ وَجَعَلۡنَا فِي قُلُوبِ ٱلَّذِينَ ٱتَّبَعُوهُ رَأۡفَةٗ وَرَحۡمَةٗۚ وَرَهۡبَانِيَّةً ٱبۡتَدَعُوهَا مَا كَتَبۡنَٰهَا عَلَيۡهِمۡ إِلَّا ٱبۡتِغَآءَ رِضۡوَٰنِ ٱللَّهِ فَمَا رَعَوۡهَا حَقَّ رِعَايَتِهَاۖ فَـَٔاتَيۡنَا ٱلَّذِينَ ءَامَنُواْ مِنۡهُمۡ أَجۡرَهُمۡۖ وَكَثِيرٞ مِّنۡهُمۡ فَٰسِقُونَ ٢٧

27. ನಂತರ ಅವರ ಹಿಂದೆಯೇ ನಾವು ನಮ್ಮ ಸಂದೇಶವಾಹಕರನ್ನು ನಿರಂತರವಾಗಿ ಕಳುಹಿಸಿದೆವು. ಮರ್ಯಮರ ಮಗ ಈಸಾರನ್ನೂ ಕಳುಹಿಸಿದೆವು. ನಾವು ಅವರಿಗೆ ಇಂಜೀಲನ್ನು ನೀಡಿದೆವು. ಅವರ ಅನುಯಾಯಿಗಳ ಹೃದಯಗಳಲ್ಲಿ ನಾವು ಅನುಕಂಪ ಮತ್ತು ದಯೆಯನ್ನಿಟ್ಟೆವು. ಅವರು ಸನ್ಯಾಸತ್ವವನ್ನು (ಐಹಿಕ ವಿರಕ್ತಿಯನ್ನು) ಸ್ವಯಂ ಆವಿಷ್ಕರಿಸಿದರು. ನಾವು ಅದನ್ನು ಅವರಿಗೆ ಕಡ್ಡಾಯ-ಗೊಳಿಸಿಲ್ಲ. ಅಲ್ಲಾಹನ ಸಂಪ್ರೀತಿ ಗಳಿಸಲು ಅವರು ಅದನ್ನು

ಅಳವಡಿಸಿಕೊಂಡರು. ನಂತರ ಅವರು ಅದನ್ನು ಪಾಲಿಸಬೇಕಾದ ರೀತಿಯಲ್ಲಿ ಪಾಲಿಸಲಿಲ್ಲ. ಆದ್ದರಿಂದ ನಾವು ಅವರ ಪೈಕಿ ಸತ್ಯ-ವಿಶ್ವಾಸಿಗಳಿಗೆ ಅವರ ಪ್ರತಿಫಲವನ್ನು ನೀಡಿದೆವು. ಅವರಲ್ಲಿ ಹೆಚ್ಚಿನವರು ದುಷ್ಕರ್ಮಿಗಳಾಗಿದ್ದರು.

---

يَٰٓأَيُّهَا ٱلَّذِينَ ءَامَنُواْ ٱتَّقُواْ ٱللَّهَ وَءَامِنُواْ بِرَسُولِهِۦ يُؤۡتِكُمۡ كِفۡلَيۡنِ مِن رَّحۡمَتِهِۦ وَيَجۡعَل لَّكُمۡ نُورٗا تَمۡشُونَ بِهِۦ وَيَغۡفِرۡ لَكُمۡۚ وَٱللَّهُ غَفُورٞ رَّحِيمٞ ٢٨

28. ಓ ಸತ್ಯವಿಶ್ವಾಸಿಗಳೇ! ನೀವು ಅಲ್ಲಾಹನನ್ನು ಭಯಪಡಿರಿ ಮತ್ತು ಅವನ ಸಂದೇಶವಾಹಕರಲ್ಲಿ ವಿಶ್ವಾಸವಿಡಿರಿ. ಅಲ್ಲಾಹು ನಿಮಗೆ ಅವನ ದಯೆಯ ಎರಡು ಪಾಲನ್ನು ನೀಡುವನು.[1] ಅವನು ನಿಮಗೆ ಬೆಳಕನ್ನು ನೀಡುವನು. ಅದರ ಮೂಲಕ ನಿಮಗೆ (ಸರಿಯಾದ ಮಾರ್ಗದಲ್ಲಿ) ನಡೆಯಬಹುದು. ಅವನು ನಿಮ್ಮ ಪಾಪಗಳನ್ನು ಕ್ಷಮಿಸುವನು. ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

---

لِّئَلَّا يَعۡلَمَ أَهۡلُ ٱلۡكِتَٰبِ أَلَّا يَقۡدِرُونَ عَلَىٰ شَيۡءٖ مِّن فَضۡلِ ٱللَّهِ وَأَنَّ ٱلۡفَضۡلَ بِيَدِ ٱللَّهِ يُؤۡتِيهِ مَن يَشَآءُۚ وَٱللَّهُ ذُو ٱلۡفَضۡلِ ٱلۡعَظِيمِ ٢٩

29. ಅದೇಕೆಂದರೆ, ಅಲ್ಲಾಹನ ಔದಾರ್ಯದಲ್ಲಿ ಏನನ್ನೂ ವಶದಲ್ಲಿಟ್ಟುಕೊಳ್ಳಲು ಅವರಿಗೆ ಸಾಧ್ಯವಿಲ್ಲ ಮತ್ತು ಔದಾರ್ಯವೆಲ್ಲವೂ ಇರುವುದು ಅಲ್ಲಾಹನ ವಶದಲ್ಲಿ ಮಾತ್ರ—ಅವನು ಇಚ್ಛಿಸುವವರಿಗೆ ಅದನ್ನು ನೀಡುತ್ತಾನೆ ಎಂದು ಗ್ರಂಥದವರು ತಿಳಿಯುವುದಕ್ಕಾಗಿ. ಅಲ್ಲಾಹು ಮಹಾ ಔದಾರ್ಯವಂತನಾಗಿದ್ದಾನೆ.

# 58. ಅಲ್-ಮುಜಾದಿಲ

بِسۡمِ ٱللَّهِ ٱلرَّحۡمَٰنِ ٱلرَّحِيمِ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

---

قَدۡ سَمِعَ ٱللَّهُ قَوۡلَ ٱلَّتِي تُجَٰدِلُكَ فِي زَوۡجِهَا وَتَشۡتَكِيٓ إِلَى ٱللَّهِ وَٱللَّهُ يَسۡمَعُ تَحَاوُرَكُمَآۚ إِنَّ ٱللَّهَ سَمِيعُۢ بَصِيرٌ ١

1. (ಓ ಪ್ರವಾದಿಯವರೇ!) ನಿಮ್ಮೊಡನೆ ತನ್ನ ಗಂಡನ ವಿಷಯದಲ್ಲಿ ತರ್ಕಿಸುವ ಮತ್ತು ತನ್ನ ಅಳಲನ್ನು ಅಲ್ಲಾಹನಲ್ಲಿ ತೋಡಿಕೊಳ್ಳುವ ಒಬ್ಬ ಮಹಿಳೆಯ ಮಾತನ್ನು ಖಂಡಿತವಾಗಿಯೂ ಅಲ್ಲಾಹು ಕೇಳಿದನು.[2] ಅಲ್ಲಾಹು ನಿಮ್ಮಿಬ್ಬರ ಸಂಭಾಷಣೆಯನ್ನು ಕೇಳುತ್ತಿದ್ದನು. ಖಂಡಿತವಾಗಿಯೂ ಅಲ್ಲಾಹು ಎಲ್ಲವನ್ನು ಕೇಳುವವನು ಮತ್ತು ನೋಡುವವನಾಗಿದ್ದಾನೆ.

---

[1] ಈ ಎರಡು ಪಾಲು ಸಿಗುವುದು ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಆಗಮನಕ್ಕೆ ಮೊದಲು ಬೇರೊಬ್ಬ ಪ್ರವಾದಿಯಲ್ಲಿ ಮತ್ತು ನಂತರ ಪ್ರವಾದಿಯವರಲ್ಲಿ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ವಿಶ್ವಾಸವಿಟ್ಟ ಸತ್ಯವಿಶ್ವಾಸಿಗಳಿಗಾಗಿದೆ.

[2] ಖೌಲ ಬಿನ್ತ್ ಮಾಲಿಕ್ ಬಿನ್ ಸಅಲಬ (ಅವರ ಬಗ್ಗೆ ಅಲ್ಲಾಹು ಸಂಪ್ರೀತನಾಗಲಿ) ರನ್ನು ಅವರ ಗಂಡ ಔಸ್ ಬಿನ್ ಸಾಮಿತ್ ಝಿಹಾರ್ ಮಾಡಿದ್ದರು. ಝಿಹಾರ್ ಎಂದರೆ ಪತ್ನಿಯೊಡನೆ, "ನೀನು ನನಗೆ ನನ್ನ ತಾಯಿಯ ಬೆನ್ನಿನಂತೆ" ಎಂದು ಹೇಳಿ ಅವಳೊಡನೆ ಲೈಂಗಿಕ ಸಂಪರ್ಕವನ್ನು ತೊರೆಯುವುದು. ಖೌಲ ಈ ವಿಷಯವನ್ನು ಪ್ರವಾದಿಯವರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ತಿಳಿಸಿ ಅವರೊಡನೆ ವಿಧಿ ಕೇಳಿದರು. ಆದರೆ ಈ ವಿಷಯದಲ್ಲಿ ಈ ತನಕ ಯಾವುದೇ ವಿಧಿ ಅವತೀರ್ಣವಾಗಿರಲಿಲ್ಲ.

2. ನಿಮ್ಮ ಪೈಕಿ ತಮ್ಮ ಪತ್ನಿಯರಿಗೆ ಝಿಹಾರ್ ಮಾಡುವವರು ಯಾರೋ—ಅವರು (ಪತ್ನಿಯರು) ಅವರ ತಾಯಂದಿರಾಗು-ವುದಿಲ್ಲ. ಅವರಿಗೆ ಜನ್ಮ ನೀಡಿದವರೇ ಅವರ ತಾಯಂದಿರು. ನಿಶ್ಚಯವಾಗಿಯೂ ಅವರು ಅಸಂಬದ್ಧ ಮಾತನ್ನು ಮತ್ತು ಸುಳ್ಳನ್ನು ಹೇಳುತ್ತಿದ್ದಾರೆ. ನಿಶ್ಚಯವಾಗಿಯೂ ಅಲ್ಲಾಹು ಮನ್ನಿಸುವವನು ಮತ್ತು ಕ್ಷಮಿಸುವವನಾಗಿದ್ದಾನೆ.

ٱلَّذِينَ يُظَٰهِرُونَ مِنكُم مِّن نِّسَآئِهِم مَّا هُنَّ
أُمَّهَٰتِهِمۡۖ إِنۡ أُمَّهَٰتُهُمۡ إِلَّا ٱلَّٰٓـِٔي وَلَدۡنَهُمۡۚ وَإِنَّهُمۡ
لَيَقُولُونَ مُنكَرٗا مِّنَ ٱلۡقَوۡلِ وَزُورٗاۚ وَإِنَّ ٱللَّهَ
لَعَفُوٌّ غَفُورٞ ٢

3. ತಮ್ಮ ಪತ್ನಿಯರಿಗೆ ಝಿಹಾರ್ ಮಾಡುವವರು, ನಂತರ ತಾವು ಹೇಳಿದ ಮಾತನ್ನು ಹಿಂದಕ್ಕೆ ಪಡೆಯಲು ಬಯಸುವವರು ಯಾರೋ, ಅವರು ಪರಸ್ಪರ ಕೂಡುವುದಕ್ಕೆ ಮುನ್ನ ಒಬ್ಬ ಗುಲಾಮನನ್ನು ಸ್ವತಂತ್ರಗೊಳಿಸಬೇಕು. ಇದು ನಿಮಗೆ ನೀಡಲಾಗುತ್ತಿರುವ ಉಪದೇಶವಾಗಿದೆ. ಅಲ್ಲಾಹು ನೀವು ಮಾಡುವ ಕರ್ಮಗಳ ಬಗ್ಗೆ ಸೂಕ್ಷ್ಮಜ್ಞಾನವುಳ್ಳವನಾಗಿದ್ದಾನೆ.

وَٱلَّذِينَ يُظَٰهِرُونَ مِن نِّسَآئِهِمۡ ثُمَّ يَعُودُونَ
لِمَا قَالُواْ فَتَحۡرِيرُ رَقَبَةٖ مِّن قَبۡلِ أَن يَتَمَآسَّاۚ
ذَٰلِكُمۡ تُوعَظُونَ بِهِۦۚ وَٱللَّهُ بِمَا تَعۡمَلُونَ
خَبِيرٞ ٣

4. ಯಾರಿಗೆ (ಸ್ವತಂತ್ರಗೊಳಿಸಲು ಗುಲಾಮ) ಸಿಗಲಿಲ್ಲವೋ ಅವನು—ಅವರು ಪರಸ್ಪರ ಕೂಡುವುದಕ್ಕೆ ಮುನ್ನ—ಎರಡು ತಿಂಗಳು ನಿರಂತರ ಉಪವಾಸ ಆಚರಿಸಬೇಕು. ಯಾರಿಗೆ ಇದು ಕೂಡ ಸಾಧ್ಯವಿಲ್ಲವೋ ಅವನು ಅರುವತ್ತು ಬಡವರಿಗೆ ಆಹಾರ ನೀಡಬೇಕು. ಇದು ನೀವು ಅಲ್ಲಾಹು ಮತ್ತು ಅವನ ಸಂದೇಶವಾಹಕರ ಆಜ್ಞೆಯನ್ನು ಪಾಲಿಸಬೇಕೆಂಬ ಕಾರಣದಿಂದಾಗಿದೆ. ಇವು ಅಲ್ಲಾಹು ನಿಶ್ಚಯಿಸಿದ ಎಲ್ಲೆಗಳಾಗಿವೆ. ಸತ್ಯನಿಷೇಧಿಗಳಿಗೆ ಯಾತನಾಮಯ ಶಿಕ್ಷೆಯಿದೆ.

فَمَن لَّمۡ يَجِدۡ فَصِيَامُ شَهۡرَيۡنِ مُتَتَابِعَيۡنِ مِن
قَبۡلِ أَن يَتَمَآسَّاۖ فَمَن لَّمۡ يَسۡتَطِعۡ فَإِطۡعَامُ سِتِّينَ
مِسۡكِينٗاۚ ذَٰلِكَ لِتُؤۡمِنُواْ بِٱللَّهِ وَرَسُولِهِۦۚ وَتِلۡكَ
حُدُودُ ٱللَّهِۗ وَلِلۡكَٰفِرِينَ عَذَابٌ أَلِيمٌ ٤

5. ನಿಶ್ಚಯವಾಗಿಯೂ ಅಲ್ಲಾಹನಿಗೆ ಮತ್ತು ಅವನ ಸಂದೇಶವಾಹಕರಿಗೆ ವಿರುದ್ಧವಾಗಿ ಸಾಗುವವರು ಯಾರೋ—ಅವರ ಪೂರ್ವಜರು ಅವಮಾನಕ್ಕೊಳಗಾದಂತೆ ಇವರೂ ಅವಮಾನಕ್ಕೊಳಗಾಗುವರು. ನಾವು ಸ್ಪಷ್ಟ ವಚನಗಳನ್ನು ಅವತೀ-ರ್ಣಗೊಳಿಸಿದ್ದೇವೆ. ಸತ್ಯನಿಷೇಧಿಗಳಿಗೆ ಅವಮಾನಕರ ಶಿಕ್ಷೆಯಿದೆ.

إِنَّ ٱلَّذِينَ يُحَآدُّونَ ٱللَّهَ وَرَسُولَهُۥ كُبِتُواْ كَمَا
كُبِتَ ٱلَّذِينَ مِن قَبۡلِهِمۡۚ وَقَدۡ أَنزَلۡنَآ ءَايَٰتِۭ
بَيِّنَٰتٖۚ وَلِلۡكَٰفِرِينَ عَذَابٞ مُّهِينٞ ٥

6. ಅಲ್ಲಾಹು ಅವರೆಲ್ಲರನ್ನೂ ಪುನರುತ್ಥಾನಗೊಳಿಸಿ, ನಂತರ ಅವರು ಮಾಡಿದ ಕರ್ಮಗಳ ಬಗ್ಗೆ ಅವರಿಗೆ ತಿಳಿಸಿಕೊಡುವ ದಿನ! ಅಲ್ಲಾಹು ಅದನ್ನು ಎಣಿಸಿಟ್ಟಿದ್ದಾನೆ. ಆದರೆ ಅವರು ಅದನ್ನು ಮರೆತುಬಿಟ್ಟಿದ್ದಾರೆ. ಅಲ್ಲಾಹು ಎಲ್ಲ ವಿಷಯಗಳಿಗೂ ಸಾಕ್ಷಿಯಾಗಿದ್ದಾನೆ.

يَوۡمَ يَبۡعَثُهُمُ ٱللَّهُ جَمِيعٗا فَيُنَبِّئُهُم بِمَا
عَمِلُوٓاْۚ أَحۡصَىٰهُ ٱللَّهُ وَنَسُوهُۚ وَٱللَّهُ عَلَىٰ كُلِّ
شَيۡءٖ شَهِيدٌ ٦

7. ಭೂಮ್ಯಾಕಾಶಗಳಲ್ಲಿರುವ ಎಲ್ಲಾ ವಸ್ತುಗಳನ್ನು ಅಲ್ಲಾಹು ತಿಳಿದಿದ್ದಾನೆಂದು ನೀವು ನೋಡಿಲ್ಲವೇ? ಮೂರು ಜನರು

أَلَمۡ تَرَ أَنَّ ٱللَّهَ يَعۡلَمُ مَا فِي ٱلسَّمَٰوَٰتِ وَمَا فِي

ٱلۡأَرۡضِۖ مَا يَكُونُ مِن نَّجۡوَىٰ ثَلَٰثَةٍ إِلَّا هُوَ رَابِعُهُمۡ وَلَا خَمۡسَةٍ إِلَّا هُوَ سَادِسُهُمۡ وَلَآ أَدۡنَىٰ مِن ذَٰلِكَ وَلَآ أَكۡثَرَ إِلَّا هُوَ مَعَهُمۡ أَيۡنَ مَا كَانُواْۖ ثُمَّ يُنَبِّئُهُم بِمَا عَمِلُواْ يَوۡمَ ٱلۡقِيَٰمَةِۚ إِنَّ ٱللَّهَ بِكُلِّ شَيۡءٍ عَلِيمٌ ٧

ನಡೆಸುವ ರಹಸ್ಯ ಮಾತುಕತೆಯು ನಾಲ್ಕನೆಯವನಾಗಿ ಅಲ್ಲಾಹು ಇಲ್ಲದಿರುವ ಹೊರತು ಸಂಭವಿಸುವುದಿಲ್ಲ. ಐದು ಜನರು ನಡೆಸುವ ರಹಸ್ಯ ಮಾತುಕತೆಯು ಆರನೆಯವನಾಗಿ ಅಲ್ಲಾಹು ಇಲ್ಲದಿರುವ ಹೊರತು ಸಂಭವಿಸುವುದಿಲ್ಲ. ಅದಕ್ಕಿಂತ ಕಡಿಮೆ ಸಂಖ್ಯೆಯ ಅಥವಾ ಹೆಚ್ಚು ಸಂಖ್ಯೆಯ ಜನರು ನಡೆಸುವ (ರಹಸ್ಯ ಮಾತುಕತೆಯು) ಅವರ ಜೊತೆಗೆ ಅಲ್ಲಾಹು ಇಲ್ಲದಿರುವ ಹೊರತು ಸಂಭವಿಸುವುದಿಲ್ಲ. ಅವರು ಎಲ್ಲೇ ಇದ್ದರೂ ಸಹ. ನಂತರ ಪುನರುತ್ಥಾನ ದಿನದಂದು ಅವರು ಮಾಡಿರುವ ಕರ್ಮಗಳ ಬಗ್ಗೆ ಅವನು ಅವರಿಗೆ ತಿಳಿಸಿಕೊಡುವನು. ನಿಶ್ಚಯವಾಗಿಯೂ ಅಲ್ಲಾಹು ಎಲ್ಲ ವಿಷಯಗಳನ್ನು ತಿಳಿದವನಾಗಿದ್ದಾನೆ.

---

أَلَمۡ تَرَ إِلَى ٱلَّذِينَ نُهُواْ عَنِ ٱلنَّجۡوَىٰ ثُمَّ يَعُودُونَ لِمَا نُهُواْ عَنۡهُ وَيَتَنَٰجَوۡنَ بِٱلۡإِثۡمِ وَٱلۡعُدۡوَٰنِ وَمَعۡصِيَتِ ٱلرَّسُولِۖ وَإِذَا جَآءُوكَ حَيَّوۡكَ بِمَا لَمۡ يُحَيِّكَ بِهِ ٱللَّهُ وَيَقُولُونَ فِيٓ أَنفُسِهِمۡ لَوۡلَا يُعَذِّبُنَا ٱللَّهُ بِمَا نَقُولُۚ حَسۡبُهُمۡ جَهَنَّمُ يَصۡلَوۡنَهَاۖ فَبِئۡسَ ٱلۡمَصِيرُ ٨

8. ರಹಸ್ಯ ಮಾತುಕತೆ ನಡೆಸುವುದನ್ನು ವಿರೋಧಿಸಲಾದ ಜನರನ್ನು ನೀವು ನೋಡಿಲ್ಲವೇ? ನಂತರ ಅವರಿಗೆ ವಿರೋಧಿಸಲಾದ ಕೆಲಸವನ್ನೇ ಅವರು ಮಾಡುತ್ತಾರೆ. ಅವರು ಪರಸ್ಪರ ಪಾಪ, ಅತಿರೇಕ ಮತ್ತು ಪ್ರವಾದಿಯನ್ನು ಧಿಕ್ಕರಿಸುವ ಕೆಲಸಗಳಿಗಾಗಿ ರಹಸ್ಯ ಮಾತುಕತೆ ಮಾಡುತ್ತಾರೆ. ಅವರು ನಿಮ್ಮ ಬಳಿಗೆ ಬಂದರೆ ಅಲ್ಲಾಹು ನಿಮಗೆ ಸಲಾಂ ಹೇಳಲು ಬಳಸದ ಪದಗಳೊಂದಿಗೆ ಅವರು ನಿಮಗೆ ಸಲಾಂ ಹೇಳುತ್ತಾರೆ.[1] "ನಾವು ಹೇಳುವ ಈ ಮಾತುಗಳಿಗಾಗಿ ಅಲ್ಲಾಹು ನಮ್ಮನ್ನೇಕೆ ಶಿಕ್ಷಿಸುವುದಿಲ್ಲ?" ಎಂದು ಅವರು ಮನಸ್ಸಿನಲ್ಲೇ ಕೇಳುತ್ತಾರೆ.[2] ಅವರಿಗೆ ನರಕಾಗ್ನಿಯೇ ಸಾಕು. ಅವರು ಅದರಲ್ಲಿ ಉರಿಯುವರು. ಆ ಗಮ್ಯಸ್ಥಾನವು ಬಹಳ ನಿಕೃಷ್ಟವಾಗಿದೆ.

---

يَٰٓأَيُّهَا ٱلَّذِينَ ءَامَنُوٓاْ إِذَا تَنَٰجَيۡتُمۡ فَلَا تَتَنَٰجَوۡاْ بِٱلۡإِثۡمِ وَٱلۡعُدۡوَٰنِ وَمَعۡصِيَتِ ٱلرَّسُولِ وَتَنَٰجَوۡاْ بِٱلۡبِرِّ وَٱلتَّقۡوَىٰۖ وَٱتَّقُواْ ٱللَّهَ ٱلَّذِيٓ إِلَيۡهِ تُحۡشَرُونَ ٩

9. ಓ ಸತ್ಯವಿಶ್ವಾಸಿಗಳೇ! ನೀವು ರಹಸ್ಯ ಮಾತುಕತೆ ನಡೆಸುವುದಾದರೆ ಪರಸ್ಪರ ಪಾಪ, ಅತಿರೇಕ ಮತ್ತು ಪ್ರವಾದಿಯನ್ನು ಧಿಕ್ಕರಿಸುವ ಕೆಲಸಗಳಿಗಾಗಿ ರಹಸ್ಯ ಮಾತುಕತೆ ನಡೆಸಬೇಡಿ. ಬದಲಿಗೆ, ಒಳಿತು ಮತ್ತು ದೇವಭಯದ ವಿಷಯಗಳಿಗಾಗಿ ರಹಸ್ಯ ಮಾತುಕತೆ ನಡೆಸಿರಿ. ಯಾವ ಅಲ್ಲಾಹನ ಬಳಿಗೆ ನಿಮ್ಮನ್ನು ಒಟ್ಟುಗೂಡಿಸಲಾಗುವುದೋ ಅವನನ್ನು ಭಯಪಡಿರಿ.

---

إِنَّمَا ٱلنَّجۡوَىٰ مِنَ ٱلشَّيۡطَٰنِ لِيَحۡزُنَ ٱلَّذِينَ

10. (ಕೆಟ್ಟ ಉದ್ದೇಶಗಳಿಗಾಗಿರುವ) ರಹಸ್ಯ ಮಾತುಕತೆಯು ಪೈಶಾಚಿಕ

---

[1] ಅಂದರೆ ಅವರು "ಅಸ್ಸಲಾಮು ಅಲೈಕುಂ" (ನಿಮ್ಮ ಮೇಲೆ ಶಾಂತಿಯಿರಲಿ) ಎಂದು ಹೇಳುವ ಬದಲು "ಅಸ್ಸಾಮು ಅಲೈಕುಂ" (ನಿಮಗೆ ಸಾವು ಬರಲಿ) ಎಂದು ಹೇಳುತ್ತಿದ್ದರು.

[2] ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ನಿಜವಾಗಿಯೂ ಒಬ್ಬ ಪ್ರವಾದಿಯಾಗಿದ್ದರೆ ನಾವು ಅವರಿಗೆ ಇಂತಹ ಮಾತನ್ನು ಹೇಳಿಯೂ ಸಹ ಅಲ್ಲಾಹು ನಮ್ಮನ್ನೇಕೆ ಶಿಕ್ಷಿಸುವುದಿಲ್ಲ? ಎಂದು ಅವರು ಪರಸ್ಪರ ಕೇಳುತ್ತಾರೆ.

ءَامَنُواْ وَلَيۡسَ بِضَآرِّهِمۡ شَيۡـًٔا إِلَّا بِإِذۡنِ ٱللَّهِۚ
وَعَلَى ٱللَّهِ فَلۡيَتَوَكَّلِ ٱلۡمُؤۡمِنُونَ ﴿١٠﴾

ಪ್ರವೃತ್ತಿಯಾಗಿದೆ. ಅದು ಸತ್ಯವಿಶ್ವಾಸಿಗಳು ವ್ಯಥೆಪಡುವಂತೆ ಮಾಡುವುದಕ್ಕಾಗಿದೆ. ಆದರೆ ಅಲ್ಲಾಹನ ಅಪ್ಪಣೆಯಿಲ್ಲದೆ ಅದು ಅವರಿಗೆ ಯಾವುದೇ ತೊಂದರೆ ಮಾಡುವುದಿಲ್ಲ. ಸತ್ಯವಿಶ್ವಾಸಿಗಳು ಅಲ್ಲಾಹನಲ್ಲಿ ಭರವಸೆಯಿಡಲಿ.

---

يَـٰٓأَيُّهَا ٱلَّذِينَ ءَامَنُوٓاْ إِذَا قِيلَ لَكُمۡ تَفَسَّحُواْ
فِي ٱلۡمَجَٰلِسِ فَٱفۡسَحُواْ يَفۡسَحِ ٱللَّهُ لَكُمۡۖ
وَإِذَا قِيلَ ٱنشُزُواْ فَٱنشُزُواْ يَرۡفَعِ ٱللَّهُ ٱلَّذِينَ
ءَامَنُواْ مِنكُمۡ وَٱلَّذِينَ أُوتُواْ ٱلۡعِلۡمَ دَرَجَٰتٖۚ
وَٱللَّهُ بِمَا تَعۡمَلُونَ خَبِيرٞ ﴿١١﴾

11. ಓ ಸತ್ಯವಿಶ್ವಾಸಿಗಳೇ! “ಸಭೆಗಳಲ್ಲಿ ಎಡೆ ಮಾಡಿಕೊಡಿ” ಎಂದು ನಿಮ್ಮೊಂದಿಗೆ ಹೇಳಲಾದರೆ ಎಡೆ ಮಾಡಿಕೊಡಿ. ಅಲ್ಲಾಹು ನಿಮಗೆ ಎಡೆ ಮಾಡಿಕೊಡುವನು. ನಿಮ್ಮೊಡನೆ “ಎದ್ದೇಳಿ” ಎಂದು ಹೇಳಲಾದರೆ ಎದ್ದೇಳಿರಿ. ನಿಮ್ಮ ಪೈಕಿ ಸತ್ಯವಿಶ್ವಾಸಿಗಳು ಮತ್ತು ಜ್ಞಾನ ನೀಡಲಾದವರನ್ನು ಅಲ್ಲಾಹು ಹಲವು ಪದವಿಗಳಿಗೆ ಏರಿಸುವನು. ಅಲ್ಲಾಹು ನೀವು ಮಾಡುತ್ತಿರುವ ಕರ್ಮಗಳ ಬಗ್ಗೆ ಸೂಕ್ಷ್ಮಜ್ಞಾನವುಳ್ಳವನಾಗಿದ್ದಾನೆ.

---

يَـٰٓأَيُّهَا ٱلَّذِينَ ءَامَنُوٓاْ إِذَا نَٰجَيۡتُمُ ٱلرَّسُولَ
فَقَدِّمُواْ بَيۡنَ يَدَيۡ نَجۡوَىٰكُمۡ صَدَقَةٗۚ ذَٰلِكَ خَيۡرٞ
لَّكُمۡ وَأَطۡهَرُۚ فَإِن لَّمۡ تَجِدُواْ فَإِنَّ ٱللَّهَ غَفُورٞ
رَّحِيمٌ ﴿١٢﴾

12. ಓ ಸತ್ಯವಿಶ್ವಾಸಿಗಳೇ! ನೀವು ಸಂದೇಶವಾಹಕರೊಂದಿಗೆ ರಹಸ್ಯ ಮಾತುಕತೆ ನಡೆಸುವುದಾದರೆ ನಿಮ್ಮ ರಹಸ್ಯ ಮಾತುಕತೆಗೆ ಮೊದಲು ದಾನ ಮಾಡಿರಿ. ಅದು ನಿಮಗೆ ಉತ್ತಮವಾಗಿದೆ ಮತ್ತು ಹೆಚ್ಚು ಪರಿಶುದ್ಧವಾಗಿದೆ. ನಿಮಗೆ ದಾನ ಮಾಡಲು ಏನೂ ಸಿಗದಿದ್ದರೆ ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

---

ءَأَشۡفَقۡتُمۡ أَن تُقَدِّمُواْ بَيۡنَ يَدَيۡ نَجۡوَىٰكُمۡ
صَدَقَٰتٖۚ فَإِذۡ لَمۡ تَفۡعَلُواْ وَتَابَ ٱللَّهُ عَلَيۡكُمۡ
فَأَقِيمُواْ ٱلصَّلَوٰةَ وَءَاتُواْ ٱلزَّكَوٰةَ وَأَطِيعُواْ ٱللَّهَ
وَرَسُولَهُۥۚ وَٱللَّهُ خَبِيرُۢ بِمَا تَعۡمَلُونَ ﴿١٣﴾

13. ರಹಸ್ಯ ಮಾತುಕತೆಗೆ ಮೊದಲು ದಾನ ಮಾಡುವುದರ ಬಗ್ಗೆ ನಿಮಗೆ ಭಯವಾಗುತ್ತಿದೆಯೇ? ನೀವು ಅದನ್ನು ಮಾಡದಿರುವುದರಿಂದ ಮತ್ತು ಅಲ್ಲಾಹು ನಿಮ್ಮನ್ನು ಕ್ಷಮಿಸಿರು-ವುದರಿಂದ ನೀವು ನಮಾಝ್ ಸಂಸ್ಥಾಪಿಸಿರಿ, ಝಕಾತ್ ನೀಡಿರಿ ಹಾಗೂ ಅಲ್ಲಾಹು ಹಾಗೂ ಅವನ ಸಂದೇಶವಾಹಕರನ್ನು ಅನುಸರಿಸಿರಿ. ಅಲ್ಲಾಹು ನೀವು ಮಾಡುತ್ತಿರುವ ಕರ್ಮಗಳ ಬಗ್ಗೆ ಸೂಕ್ಷ್ಮಜ್ಞಾನವುಳ್ಳವನಾಗಿದ್ದಾನೆ.

---

أَلَمۡ تَرَ إِلَى ٱلَّذِينَ تَوَلَّوۡاْ قَوۡمًا غَضِبَ ٱللَّهُ
عَلَيۡهِم مَّا هُم مِّنكُمۡ وَلَا مِنۡهُمۡ وَيَحۡلِفُونَ
عَلَى ٱلۡكَذِبِ وَهُمۡ يَعۡلَمُونَ ﴿١٤﴾

14. ಅಲ್ಲಾಹನ ಕೋಪಕ್ಕೆ ಪಾತ್ರರಾದ ಜನರೊಡನೆ (ಯಹೂದರೊಡನೆ) ಮೈತ್ರಿ ಮಾಡಿಕೊಂಡವರನ್ನು (ಕಪಟವಿಶ್ವಾ-ಸಿಗಳನ್ನು) ನೀವು ನೋಡಿಲ್ಲವೇ? ಅವರು ನಿಮ್ಮಲ್ಲಿ ಸೇರಿದವರಲ್ಲ. ಅವರಲ್ಲಿ (ಯಹೂದರಲ್ಲಿ) ಸೇರಿದವರೂ ಅಲ್ಲ. ಅವರು ತಿಳಿದವರಾಗಿದ್ದೂ ಸುಳ್ಳಿನ ಆಧಾರದಲ್ಲಿ ಆಣೆ ಮಾಡುತ್ತಾರೆ.

---

أَعَدَّ ٱللَّهُ لَهُمۡ عَذَابٗا شَدِيدًاۖ إِنَّهُمۡ سَآءَ مَا كَانُواْ
يَعۡمَلُونَ ﴿١٥﴾

15. ಅಲ್ಲಾಹು ಅವರಿಗೆ ಕಠೋರ ಶಿಕ್ಷೆಯನ್ನು ಸಿದ್ಧಗೊಳಿಸಿ-ದ್ದಾನೆ. ನಿಶ್ಚಯವಾಗಿಯೂ ಅವರು ಮಾಡುವ ಕೆಲಸವು ಅತಿ ನಿಕೃಷ್ಟವಾಗಿದೆ.

| | |
|---|---|
| 16. ಅವರು ತಮ್ಮ ಆಣೆಗಳನ್ನು ಗುರಾಣಿಯಾಗಿ ಮಾಡಿದ್ದಾರೆ ಮತ್ತು ಜನರನ್ನು ಅಲ್ಲಾಹನ ಮಾರ್ಗದಿಂದ ತಡೆಯುತ್ತಾರೆ. ಅವರಿಗೆ ಅವಮಾನಕರ ಶಿಕ್ಷೆಯಿದೆ. | ٱتَّخَذُوٓاْ أَيۡمَٰنَهُمۡ جُنَّةٗ فَصَدُّواْ عَن سَبِيلِ ٱللَّهِ فَلَهُمۡ عَذَابٞ مُّهِينٞ ١٦ |
| 17. ಅವರ ಆಸ್ತಿ ಅಥವಾ ಮಕ್ಕಳು ಅಲ್ಲಾಹನ ಬಳಿ ಅವರಿಗೆ ಯಾವುದೇ ಪ್ರಯೋಜನ ನೀಡುವುದಿಲ್ಲ. ಅವರೇ ನರಕವಾಸಿಗಳು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುತ್ತಾರೆ. | لَّن تُغۡنِيَ عَنۡهُمۡ أَمۡوَٰلُهُمۡ وَلَآ أَوۡلَٰدُهُم مِّنَ ٱللَّهِ شَيۡـًٔاۚ أُوْلَٰٓئِكَ أَصۡحَٰبُ ٱلنَّارِۖ هُمۡ فِيهَا خَٰلِدُونَ ١٧ |
| 18. ಅಲ್ಲಾಹು ಅವರೆಲ್ಲರನ್ನೂ ಪುನರುತ್ಥಾನಗೊಳಿಸುವ ದಿನ! ಅವರು ನಿಮ್ಮ ಮುಂದೆ ಆಣೆ ಮಾಡುವಂತೆ ಅಲ್ಲಾಹನ ಮುಂದೆಯೂ ಆಣೆ ಮಾಡುವರು. ಅವರು (ಒಂದು ಆಧಾರದ) ಮೇಲಿದ್ದಾರೆಂದು ಅವರು ಭಾವಿಸುತ್ತಾರೆ. ತಿಳಿಯಿರಿ! ನಿಶ್ಚಯವಾಗಿಯೂ ಅವರೇ ಸುಳ್ಳುಗಾರರು. | يَوۡمَ يَبۡعَثُهُمُ ٱللَّهُ جَمِيعٗا فَيَحۡلِفُونَ لَهُۥ كَمَا يَحۡلِفُونَ لَكُمۡ وَيَحۡسَبُونَ أَنَّهُمۡ عَلَىٰ شَيۡءٍۚ أَلَآ إِنَّهُمۡ هُمُ ٱلۡكَٰذِبُونَ ١٨ |
| 19. ಶೈತಾನನು ಅವರ ಮೇಲೆ ಪ್ರಾಬಲ್ಯ ಪಡೆದಿದ್ದಾನೆ ಮತ್ತು ಅವರು ಅಲ್ಲಾಹನ ಸ್ಮರಣೆಯನ್ನು ಮರೆಯುವಂತೆ ಮಾಡಿದ್ದಾನೆ. ಅವರೇ ಶೈತಾನನ ಪಂಗಡದವರು. ತಿಳಿಯಿರಿ! ನಿಶ್ಚಯವಾಗಿಯೂ ಶೈತಾನನ ಪಂಗಡದವರೇ ನಷ್ಟ ಹೊಂದಿದವರು. | ٱسۡتَحۡوَذَ عَلَيۡهِمُ ٱلشَّيۡطَٰنُ فَأَنسَىٰهُمۡ ذِكۡرَ ٱللَّهِۚ أُوْلَٰٓئِكَ حِزۡبُ ٱلشَّيۡطَٰنِۚ أَلَآ إِنَّ حِزۡبَ ٱلشَّيۡطَٰنِ هُمُ ٱلۡخَٰسِرُونَ ١٩ |
| 20. ನಿಶ್ಚಯವಾಗಿಯೂ ಅಲ್ಲಾಹು ಮತ್ತು ಅವನ ಸಂದೇಶವಾಹಕರಿಗೆ ವಿರುದ್ಧವಾಗಿ ಸಾಗುವವರು ಯಾರೋ ಅವರು ಅತ್ಯಂತ ಅವಮಾನಕರ ಸ್ಥಿತಿಯಲ್ಲಿರುವರು. | إِنَّ ٱلَّذِينَ يُحَآدُّونَ ٱللَّهَ وَرَسُولَهُۥٓ أُوْلَٰٓئِكَ فِي ٱلۡأَذَلِّينَ ٢٠ |
| 21. "ನಿಶ್ಚಯವಾಗಿಯೂ ನಾನು ಮತ್ತು ನನ್ನ ಸಂದೇಶವಾಹಕರೇ ವಿಜಯಗಳಿಸುವವರು" ಎಂದು ಅಲ್ಲಾಹು ದಾಖಲಿಸಿದ್ದಾನೆ. ನಿಶ್ಚಯವಾಗಿಯೂ ಅಲ್ಲಾಹು ಶಕ್ತಿಶಾಲಿ ಮತ್ತು ಪ್ರಬಲನಾಗಿದ್ದಾನೆ. | كَتَبَ ٱللَّهُ لَأَغۡلِبَنَّ أَنَا۠ وَرُسُلِيٓۚ إِنَّ ٱللَّهَ قَوِيٌّ عَزِيزٞ ٢١ |
| 22. ಅಲ್ಲಾಹನಲ್ಲಿ ಮತ್ತು ಅಂತ್ಯದಿನದಲ್ಲಿ ವಿಶ್ವಾಸವಿಡುವ ಜನರು ಅಲ್ಲಾಹು ಮತ್ತು ಅವನ ಸಂದೇಶವಾಹಕರಿಗೆ ವಿರುದ್ಧವಾಗಿ ಸಾಗುವವರೊಡನೆ ಮೈತ್ರಿ ಮಾಡುವುದನ್ನು ನೀವು ಕಾಣಲಾರಿರಿ. ಅವರು ಅವರ ತಂದೆಯರು, ಮಕ್ಕಳು, ಸಹೋದರರು ಅಥವಾ ಸಂಬಂಧಿಕರಾಗಿದ್ದರೂ ಸಹ. ಅವರ ಹೃದಯಗಳಲ್ಲಿ ಅವನು ವಿಶ್ವಾಸವನ್ನು ದಾಖಲಿಸಿದ್ದಾನೆ ಮತ್ತು ತನ್ನ ವತಿಯ ಆತ್ಮದಿಂದ ಅವರಿಗೆ ಬೆಂಬಲವನ್ನು ನೀಡಿದ್ದಾನೆ. ಅವನು ಅವರನ್ನು ತಳಭಾಗದಲ್ಲಿ ನದಿಗಳು ಹರಿಯುವ ಸ್ವರ್ಗೋದ್ಯಾನಗಳಿಗೆ ಪ್ರವೇಶ ಮಾಡಿಸುವನು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಿದ್ದಾನೆ ಮತ್ತು ಅವರು | لَّا تَجِدُ قَوۡمٗا يُؤۡمِنُونَ بِٱللَّهِ وَٱلۡيَوۡمِ ٱلۡأٓخِرِ يُوَآدُّونَ مَنۡ حَآدَّ ٱللَّهَ وَرَسُولَهُۥ وَلَوۡ كَانُوٓاْ ءَابَآءَهُمۡ أَوۡ أَبۡنَآءَهُمۡ أَوۡ إِخۡوَٰنَهُمۡ أَوۡ عَشِيرَتَهُمۡۚ أُوْلَٰٓئِكَ كَتَبَ فِي قُلُوبِهِمُ ٱلۡإِيمَٰنَ وَأَيَّدَهُم بِرُوحٖ مِّنۡهُۖ وَيُدۡخِلُهُمۡ جَنَّٰتٖ تَجۡرِي مِن تَحۡتِهَا ٱلۡأَنۡهَٰرُ خَٰلِدِينَ فِيهَاۚ رَضِيَ ٱللَّهُ عَنۡهُمۡ وَرَضُواْ عَنۡهُۚ أُوْلَٰٓئِكَ حِزۡبُ ٱللَّهِۚ أَلَآ إِنَّ حِزۡبَ ٱللَّهِ هُمُ ٱلۡمُفۡلِحُونَ ٢٢ |

ಅಲ್ಲಾಹನ ಬಗ್ಗೆ ಸಂಪ್ರೀತರಾಗಿದ್ದಾರೆ. ಅವರೇ ಅಲ್ಲಾಹನ ಪಂಗಡದವರು. ತಿಳಿಯಿರಿ! ನಿಶ್ಚಯವಾಗಿಯೂ ಅಲ್ಲಾಹನ ಪಂಗಡದವರೇ ವಿಜಯಗಳಿಸುವವರು.

# 59. ಅಲ್-ಹಶ್ರ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಭೂಮ್ಯಾಕಾಶಗಳಲ್ಲಿರುವ ಎಲ್ಲಾ ವಸ್ತುಗಳೂ ಅಲ್ಲಾಹನ ಪರಿಶುದ್ಧಿಯನ್ನು ಕೊಂಡಾಡುತ್ತಿವೆ. ಅವನು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

سَبَّحَ لِلَّهِ مَا فِي ٱلسَّمَٰوَٰتِ وَمَا فِي ٱلۡأَرۡضِۖ وَهُوَ ٱلۡعَزِيزُ ٱلۡحَكِيمُ ١

2. ಅವನೇ ಪ್ರಥಮ ಗಡೀಪಾರಿನಲ್ಲಿ ಗ್ರಂಥದವರಲ್ಲಿ ಸೇರಿದ ಸತ್ಯನಿಷೇಧಿಗಳನ್ನು ಅವರ ಮನೆಗಳಿಂದ ಹೊರದಬ್ಬಿದವನು.[1] ಅವರು ಹೊರಹೋಗುವರೆಂದು ನೀವು ಊಹಿಸಿಯೂ ಇರಲಿಲ್ಲ. ಅವರ ಕೋಟೆಗಳು ಅವರನ್ನು ಅಲ್ಲಾಹನ ಶಿಕ್ಷೆಯಿಂದ ಕಾಪಾಡುತ್ತವೆ ಎಂದು ಅವರು ಭಾವಿಸಿದ್ದರು. ಆದರೆ ಅವರು ನಿರೀಕ್ಷಿಸಿಯೇ ಇರದ ಕಡೆಯಿಂದ ಅಲ್ಲಾಹನ ಶಿಕ್ಷೆಯು ಅವರ ಬಳಿಗೆ ಬಂತು. ಅಲ್ಲಾಹು ಅವರ ಹೃದಯದಲ್ಲಿ ಭೀತಿಯನ್ನು ಬಿತ್ತಿದನು. ಅವರು ಅವರ ಕೈಗಳಿಂದಲೇ ಅವರ ಮನೆಗಳನ್ನು ನಾಶ ಮಾಡುತ್ತಿದ್ದರು. ಸತ್ಯವಿಶ್ವಾಸಿಗಳ ಕೈಗಳು ಕೂಡ (ಅವುಗಳನ್ನು ನಾಶ ಮಾಡಿಸುತ್ತಿದ್ದವು). ಆದ್ದರಿಂದ ಓ ದೃಷ್ಟಿಯುಳ್ಳವರೇ, ಇದರಿಂದ ಪಾಠ ಕಲಿತುಕೊಳ್ಳಿರಿ.

هُوَ ٱلَّذِيٓ أَخۡرَجَ ٱلَّذِينَ كَفَرُواْ مِنۡ أَهۡلِ ٱلۡكِتَٰبِ مِن دِيَٰرِهِمۡ لِأَوَّلِ ٱلۡحَشۡرِۚ مَا ظَنَنتُمۡ أَن يَخۡرُجُواْۖ وَظَنُّوٓاْ أَنَّهُم مَّانِعَتُهُمۡ حُصُونُهُم مِّنَ ٱللَّهِ فَأَتَىٰهُمُ ٱللَّهُ مِنۡ حَيۡثُ لَمۡ يَحۡتَسِبُواْۖ وَقَذَفَ فِي قُلُوبِهِمُ ٱلرُّعۡبَۚ يُخۡرِبُونَ بُيُوتَهُم بِأَيۡدِيهِمۡ وَأَيۡدِي ٱلۡمُؤۡمِنِينَ فَٱعۡتَبِرُواْ يَٰٓأُوْلِي ٱلۡأَبۡصَٰرِ ٢

3. ಅಲ್ಲಾಹು ಅವರಿಗೆ ಊರು ಬಿಡುವುದನ್ನು ವಿಧಿಸದಿರುತ್ತಿದ್ದರೆ ಭೂಲೋಕದಲ್ಲೇ ಅವರನ್ನು ಶಿಕ್ಷಿಸುತ್ತಿದ್ದನು. ಪರಲೋಕದಲ್ಲಿ ಅವರಿಗೆ ನರಕಾಗ್ನಿಯ ಶಿಕ್ಷೆಯಿದೆ.

وَلَوۡلَآ أَن كَتَبَ ٱللَّهُ عَلَيۡهِمُ ٱلۡجَلَآءَ لَعَذَّبَهُمۡ فِي ٱلدُّنۡيَاۖ وَلَهُمۡ فِي ٱلۡأٓخِرَةِ عَذَابُ ٱلنَّارِ ٣

[1] ಮದೀನದ ಆಸುಪಾಸಿನಲ್ಲಿ ಮೂರು ಯಹೂದಿ ಗೋತ್ರಗಳು ವಾಸವಾಗಿದ್ದವು. ಬನೂ ನದೀರ್, ಬನೂ ಕುರೈಝ ಮತ್ತು ಬನೂ ಕೈನುಕಾ. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮದೀನಕ್ಕೆ ಬಂದಾಗ ಇವರೊಡನೆ ಶಾಂತಿ ಒಪ್ಪಂದ ಮಾಡಿಕೊಂಡಿದ್ದರು. ಆದರೆ ಅವಕಾಶ ದೊರೆತಾಗಲೆಲ್ಲಾ ಇವರು ರಹಸ್ಯ ಮಾತುಕತೆ ನಡೆಸಿ ಮುಸ್ಲಿಮರ ವಿರುದ್ಧ ವೈರಿಗಳೊಡನೆ ಕೈ ಜೋಡಿಸುತ್ತಿದ್ದರು. ಒಮ್ಮೆ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಬನೂ ನದೀರ್ ಗೋತ್ರದವರ ಬಳಿಗೆ ಹೋದಾಗ ಅವರು ಒಂದು ದೊಡ್ಡ ಕಲ್ಲನ್ನು ಉರುಳಿಸಿ ಪ್ರವಾದಿಯವರನ್ನು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಕೊಲೆ ಮಾಡುವ ಸಂಚು ನಡೆಸಿದ್ದರು. ದಿವ್ಯವಾಣಿಯ ಮೂಲಕ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇದರ ಬಗ್ಗೆ ತಿಳಿದು ಮದೀನಕ್ಕೆ ಮರಳಿದರು. ಒಪ್ಪಂದವನ್ನು ಮುರಿದ ಕಾರಣ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅವರ ಮೇಲೆ ದಾಳಿ ಮಾಡಿದರು. ಅವರು ತಮ್ಮ ಕೋಟೆಗಳಲ್ಲಿ ಆಶ್ರಯಪಡೆದರು. ಹಲವು ದಿನಗಳ ಕಾಲ ಕೋಟೆಯೊಳಗಿದ್ದು ನಂತರ ಗತ್ಯಂತರವಿಲ್ಲದೆ ಅವರು ಶರಣಾಗಿ ಪ್ರಾಣವನ್ನು ಉಳಿಸಿಕೊಳ್ಳಲು ಮದೀನದಿಂದ ಹೊರಹೋಗುತ್ತೇವೆಂದರು. ಇದನ್ನು ಪ್ರಥಮ ಗಡೀಪಾರು ಎಂದು ಕರೆಯಲಾಗುತ್ತದೆ. ಅವರು ಮದೀನದಿಂದ ಹೊರಹೋಗಿ ಖೈಬರ್‌ನಲ್ಲಿ ಆಶ್ರಯಪಡೆದರು. ಎರಡನೇ ಖಲೀಫ ಉಮರ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ತಮ್ಮ ಆಡಳಿತಕಾಲದಲ್ಲಿ ಇವರು ಅಲ್ಲಿಂದ ಶಾಮ್ (ಸಿರಿಯಾ ಜೋರ್ಡಾನ್ ಪ್ರದೇಶ)ಗೆ ಗಡೀಪಾರ ಮಾಡಿದರು.

4. ಅದೇಕೆಂದರೆ ಅವರು ಅಲ್ಲಾಹು ಮತ್ತು ಅವನ ಸಂದೇಶವಾಹಕರಿಗೆ ವಿರುದ್ಧವಾಗಿ ಸಾಗಿದರು. ಯಾರು ಅಲ್ಲಾಹನಿಗೆ ವಿರುದ್ಧವಾಗಿ ಸಾಗುತ್ತಾರೋ—ಅವರಿಗೆ ಅಲ್ಲಾಹು ಅತಿಕಠೋರ ಶಿಕ್ಷೆಯನ್ನು ನೀಡುತ್ತಾನೆ.

ذَٰلِكَ بِأَنَّهُمۡ شَآقُّواْ ٱللَّهَ وَرَسُولَهُۥۖ وَمَن يُشَآقِّ ٱللَّهَ فَإِنَّ ٱللَّهَ شَدِيدُ ٱلۡعِقَابِ ٤

5. ನೀವು ಖರ್ಜೂರದ ಮರಗಳಲ್ಲಿ ಯಾವುದನ್ನೆಲ್ಲಾ ಕಡಿದಿದ್ದೀರೋ ಮತ್ತು ಯಾವುದನ್ನೆಲ್ಲಾ ಅದರ ಕಾಂಡದ ಮೇಲೆ ನಿಲ್ಲುವಂತೆ ಹಾಗೆಯೇ ಬಿಟ್ಟಿದ್ದೀರೋ—ಇವೆಲ್ಲವೂ ಅಲ್ಲಾಹನ ಅಪ್ಪಣೆಯಿಂದಲೇ ಆಗಿತ್ತು. ಅದು ಅಲ್ಲಾಹು ಆ ದುಷ್ಕರ್ಮಿಗಳನ್ನು ಅವಮಾನಿಸುವುದಕ್ಕಾಗಿತ್ತು.

مَا قَطَعۡتُم مِّن لِّينَةٍ أَوۡ تَرَكۡتُمُوهَا قَآئِمَةً عَلَىٰٓ أُصُولِهَا فَبِإِذۡنِ ٱللَّهِ وَلِيُخۡزِيَ ٱلۡفَٰسِقِينَ ٥

6. ಅವರ ಆಸ್ತಿಗಳಲ್ಲಿ ಏನನ್ನೆಲ್ಲಾ ಅಲ್ಲಾಹು ಅವನ ಸಂದೇಶವಾಹಕರಿಗೆ ವಶಪಡಿಸಿಕೊಟ್ಟನೋ ಅದಕ್ಕಾಗಿ ನೀವು ಕುದುರೆಗಳನ್ನೋ ಒಂಟೆಗಳನ್ನೋ ಓಡಿಸಬೇಕಾಗಿ ಬರಲಿಲ್ಲ.[1] ಅಲ್ಲಾಹು ಅವನು ಇಚ್ಛಿಸುವವರ ಮೇಲೆ ಅವನ ಸಂದೇಶವಾಹಕರಿಗೆ ಅಧಿಕಾರವನ್ನು ನೀಡುತ್ತಾನೆ. ಅಲ್ಲಾಹು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

وَمَآ أَفَآءَ ٱللَّهُ عَلَىٰ رَسُولِهِۦ مِنۡهُمۡ فَمَآ أَوۡجَفۡتُمۡ عَلَيۡهِ مِنۡ خَيۡلٖ وَلَا رِكَابٖ وَلَٰكِنَّ ٱللَّهَ يُسَلِّطُ رُسُلَهُۥ عَلَىٰ مَن يَشَآءُۚ وَٱللَّهُ عَلَىٰ كُلِّ شَيۡءٖ قَدِيرٞ ٦

7. ವಿವಿಧ ಊರುಗಳ ಜನರ ಆಸ್ತಿಗಳಿಂದ ಅಲ್ಲಾಹು ತನ್ನ ಸಂದೇಶವಾಹಕರಿಗೆ ಏನನ್ನು ವಶಪಡಿಸಿಕೊಟ್ಟನೋ, ಅದು ಅಲ್ಲಾಹನಿಗೆ, ಸಂದೇಶವಾಹಕರಿಗೆ, ಹತ್ತಿರದ ಸಂಬಂಧಿಕರಿಗೆ, ಅನಾಥರಿಗೆ, ಕಡುಬಡವರಿಗೆ ಮತ್ತು ಪ್ರಯಾಣಿಕರಿಗೆ ಇರುವುದಾಗಿದೆ. ಇದೇಕೆಂದರೆ, ಧನವು ನಿಮ್ಮಲ್ಲಿನ ಶ್ರೀಮಂತರ ನಡುವೆ ಮಾತ್ರ ಚಲಾವಣೆಯಾ-ಗದಿರುವುದಕ್ಕಾಗಿ. ಸಂದೇಶವಾಹಕರು ನಿಮಗೆ ಏನು ಕೊಡುತ್ತಾರೋ ಅದನ್ನು ಸ್ವೀಕರಿಸಿರಿ ಮತ್ತು ಅವರು ನಿಮಗೆ ಏನು ವಿರೋಧಿಸುತ್ತಾರೋ ಅದರಿಂದ ದೂರವಿರಿ. ಅಲ್ಲಾಹನನ್ನು ಭಯಪಡಿರಿ. ನಿಶ್ಚಯವಾಗಿಯೂ ಅಲ್ಲಾಹು ಅತಿಕಠೋರವಾಗಿ ಶಿಕ್ಷಿಸುವವನಾಗಿದ್ದಾನೆ.

مَّآ أَفَآءَ ٱللَّهُ عَلَىٰ رَسُولِهِۦ مِنۡ أَهۡلِ ٱلۡقُرَىٰ فَلِلَّهِ وَلِلرَّسُولِ وَلِذِي ٱلۡقُرۡبَىٰ وَٱلۡيَتَٰمَىٰ وَٱلۡمَسَٰكِينِ وَٱبۡنِ ٱلسَّبِيلِ كَيۡ لَا يَكُونَ دُولَةَۢ بَيۡنَ ٱلۡأَغۡنِيَآءِ مِنكُمۡۚ وَمَآ ءَاتَىٰكُمُ ٱلرَّسُولُ فَخُذُوهُ وَمَا نَهَىٰكُمۡ عَنۡهُ فَٱنتَهُواْۚ وَٱتَّقُواْ ٱللَّهَۖ إِنَّ ٱللَّهَ شَدِيدُ ٱلۡعِقَابِ ٧

8. (ಆ ಧನವು) ತಮ್ಮ ಮನೆಗಳಿಂದ ಮತ್ತು ಆಸ್ತಿಗಳಿಂದ ಹೊರದಬ್ಬಲಾದ ಬಡ ಮುಹಾಜಿರರಿಗೆ ಇರುವುದಾಗಿದೆ. ಅವರು

لِلۡفُقَرَآءِ ٱلۡمُهَٰجِرِينَ ٱلَّذِينَ أُخۡرِجُواْ مِن دِيَٰرِهِمۡ وَأَمۡوَٰلِهِمۡ يَبۡتَغُونَ فَضۡلٗا مِّنَ ٱللَّهِ

[1] ಬನೂ ನದೀರ್ ವಾಸವಾಗಿದ್ದ ಸ್ಥಳವು ಮದೀನದಿಂದ ಕೇವಲ ಮೂರು ಅಥವಾ ನಾಲ್ಕು ಮೈಲು ದೂರದಲ್ಲಿತ್ತು. ಆದ್ದರಿಂದ ಅದನ್ನು ವಶಪಡಿಸಲು ಮುಸ್ಲಿಮರಿಗೆ ದೀರ್ಘ ಯಾತ್ರೆ ಮಾಡುವ ಅಗತ್ಯ ಬರಲಿಲ್ಲ. ಅಥವಾ ಅದನ್ನು ವಶಪಡಿಸಲು ಮುಸ್ಲಿಮರಿಗೆ ಒಂಟೆ ಅಥವಾ ಕುದುರೆಗಳನ್ನು ಓಡಿಸಬೇಕಾಗಿ ಬರಲಿಲ್ಲ. ಮಾತ್ರವಲ್ಲದೆ, ಅದನ್ನು ಒಪ್ಪಂದದ ಮೂಲಕ ವಶಪಡಿಸಲಾಯಿತು. ಯುದ್ಧವಿಲ್ಲದೆ ವಶವಾಗುವ ಸಂಪತ್ತನ್ನು ಫೈಅ್ ಎಂದು ಕರೆಯಲಾಗುತ್ತದೆ. ಯುದ್ಧದಿಂದ ವಶವಾಗುವ ಸಂಪತ್ತನ್ನು ಗನೀಮತ್ (ಸಮರಾರ್ಜಿತ ಸೊತ್ತು) ಎಂದು ಕರೆಯಲಾಗುತ್ತದೆ.

ಅಲ್ಲಾಹನ ಔದಾರ್ಯ ಮತ್ತು ಸಂಪ್ರೀತಿಯನ್ನು ಹುಡುಕುತ್ತಾರೆ ಮತ್ತು ಅಲ್ಲಾಹು ಹಾಗೂ ಅವನ ಸಂದೇಶವಾಹಕರಿಗೆ ಸಹಾಯ ಮಾಡುತ್ತಾರೆ. ಅವರೇ ಸತ್ಯವಂತರು.

وَرِضۡوَٰنٗا وَيَنصُرُونَ ٱللَّهَ وَرَسُولَهُۥٓۚ أُوْلَٰٓئِكَ هُمُ ٱلصَّٰدِقُونَ ٨

---

9. ಅವರಿಗಿಂತ ಮೊದಲೇ ಆ ಮನೆಯಲ್ಲಿ (ಮದೀನದಲ್ಲಿ) ಮತ್ತು ಸತ್ಯವಿಶ್ವಾಸದಲ್ಲಿ ವಾಸ್ತವ್ಯವನ್ನು ಸಿದ್ಧಗೊಳಿಸಿದವರಿಗೂ (ಇರುವುದಾಗಿದೆ). ಅವರು ತಮ್ಮ ಬಳಿಗೆ ವಲಸೆ (ಹಿಜ್ರ) ಮಾಡಿದವರನ್ನು ಪ್ರೀತಿಸುತ್ತಾರೆ.[1] ಮುಹಾಜಿರರಿಗೆ ಏನು ಕೊಡಲಾಗುತ್ತದೋ ಅದರ ಬಗ್ಗೆ ಇವರಿಗೆ ಇವರ ಹೃದಯದಲ್ಲಿ ಯಾವುದೇ ಅಸಮಾಧಾನವು ಉಂಟಾಗುವುದಿಲ್ಲ. ತಮಗೆ ಎಷ್ಟೇ ಅಗತ್ಯವಿದ್ದರೂ ಸಹ ಇವರು ಅವರಿಗೆ ಆದ್ಯತೆಯನ್ನು ನೀಡುತ್ತಾರೆ. ಯಾರನ್ನು ಅವರ ಮನಸ್ಸಿನ ಜಿಪುಣತನದಿಂದ ರಕ್ಷಿಸಲಾಗಿದೆಯೋ ಅವರೇ ಯಶಸ್ವಿಯಾದವರು.

وَٱلَّذِينَ تَبَوَّءُو ٱلدَّارَ وَٱلۡإِيمَٰنَ مِن قَبۡلِهِمۡ يُحِبُّونَ مَنۡ هَاجَرَ إِلَيۡهِمۡ وَلَا يَجِدُونَ فِي صُدُورِهِمۡ حَاجَةٗ مِّمَّآ أُوتُواْ وَيُؤۡثِرُونَ عَلَىٰٓ أَنفُسِهِمۡ وَلَوۡ كَانَ بِهِمۡ خَصَاصَةٞۚ وَمَن يُوقَ شُحَّ نَفۡسِهِۦ فَأُوْلَٰٓئِكَ هُمُ ٱلۡمُفۡلِحُونَ ٩

---

10. ಅವರ ಬಳಿಕ ಬಂದವರಿಗೂ (ಇರುವುದಾಗಿದೆ). ಅವರು ಹೇಳುತ್ತಾರೆ: "ನಮ್ಮ ಪರಿಪಾಲಕನೇ! ನಮಗೆ ಮತ್ತು ಸತ್ಯವಿಶ್ವಾಸದಲ್ಲಿ ನಮಗಿಂತ ಮುಂಚೂಣಿಯಲ್ಲಿರುವ ನಮ್ಮ ಸಹೋದರರಿಗೆ ಕ್ಷಮಿಸು. ಸತ್ಯವಿಶ್ವಾಸಿಗಳ ಬಗ್ಗೆ ನಮ್ಮ ಹೃದಯದಲ್ಲಿ ಯಾವುದೇ ದ್ವೇಷವನ್ನು ಉಂಟುಮಾಡಬೇಡ. ನಮ್ಮ ಪರಿಪಾಲಕನೇ! ನಿಶ್ಚಯವಾಗಿಯೂ ನೀನು ಕೃಪೆ ತೋರುವವನು ಮತ್ತು ದಯೆ ತೋರುವವನಾಗಿರುವೆ."

وَٱلَّذِينَ جَآءُو مِنۢ بَعۡدِهِمۡ يَقُولُونَ رَبَّنَا ٱغۡفِرۡ لَنَا وَلِإِخۡوَٰنِنَا ٱلَّذِينَ سَبَقُونَا بِٱلۡإِيمَٰنِ وَلَا تَجۡعَلۡ فِي قُلُوبِنَا غِلّٗا لِّلَّذِينَ ءَامَنُواْ رَبَّنَآ إِنَّكَ رَءُوفٞ رَّحِيمٌ ١٠

---

11. ಆ ಕಪಟವಿಶ್ವಾಸಿಗಳನ್ನು ನೀವು ನೋಡಿಲ್ಲವೇ? ಗ್ರಂಥದವರಲ್ಲಿ ಸೇರಿದ ತಮ್ಮ ಸತ್ಯನಿಷೇಧಿ ಸಹೋದರರೊಂದಿಗೆ ಅವರು ಹೇಳುತ್ತಾರೆ: "ನಿಮ್ಮನ್ನು ಗಡೀಪಾರು ಮಾಡಲಾದರೆ ಖಂಡಿತವಾಗಿಯೂ ನಾವು ನಿಮ್ಮೊಂದಿಗೆ ಹೊರಹೋಗುತ್ತೇವೆ. ನಿಮ್ಮ ವಿಷಯದಲ್ಲಿ ನಾವು ಯಾರ ಮಾತನ್ನೂ ಕೇಳುವುದಿಲ್ಲ. ನಿಮ್ಮ ವಿರುದ್ಧ ಯುದ್ಧ ನಡೆದರೆ ಖಂಡಿತವಾಗಿಯೂ ನಾವು ನಿಮಗೆ ಸಹಾಯ ಮಾಡುತ್ತೇವೆ." ನಿಶ್ಚಯವಾಗಿಯೂ ಅವರು ಸುಳ್ಳು ಹೇಳುತ್ತಿದ್ದಾರೆಂದು ಅಲ್ಲಾಹು ಸಾಕ್ಷಿ ನುಡಿಯುತ್ತಾನೆ.

أَلَمۡ تَرَ إِلَى ٱلَّذِينَ نَافَقُواْ يَقُولُونَ لِإِخۡوَٰنِهِمُ ٱلَّذِينَ كَفَرُواْ مِنۡ أَهۡلِ ٱلۡكِتَٰبِ لَئِنۡ أُخۡرِجۡتُمۡ لَنَخۡرُجَنَّ مَعَكُمۡ وَلَا نُطِيعُ فِيكُمۡ أَحَدًا أَبَدٗا وَإِن قُوتِلۡتُمۡ لَنَنصُرَنَّكُمۡ وَٱللَّهُ يَشۡهَدُ إِنَّهُمۡ لَكَٰذِبُونَ ١١

---

12. ಅವರನ್ನು (ಯಹೂದಿಗಳನ್ನು) ಗಡೀಪಾರು ಮಾಡಲಾದರೆ ಇವರು (ಕಪಟವಿಶ್ವಾಸಿಗಳು) ಅವರ ಜೊತೆಗೆ ಖಂಡಿತ ಹೊರಹೋಗುವುದಿಲ್ಲ. ಅವರ ವಿರುದ್ಧ ಯುದ್ಧ ನಡೆದರೆ ಇವರು

لَئِنۡ أُخۡرِجُواْ لَا يَخۡرُجُونَ مَعَهُمۡ وَلَئِن قُوتِلُواْ لَا يَنصُرُونَهُمۡ وَلَئِن نَّصَرُوهُمۡ لَيُوَلُّنَّ ٱلۡأَدۡبَٰرَ

---

[1] ಮುಹಾಜಿರ್‌ಗಳೆಂದರೆ ಮಕ್ಕಾದಿಂದ ಮದೀನಕ್ಕೆ ವಲಸೆ ಬಂದವರು. ಅವರಿಗೆ ಸಂರಕ್ಷಣೆ ನೀಡಿ ಸಹಾಯ ಮಾಡಿದ ಮದೀನ ನಿವಾಸಿಗಳಾದ ಮುಸ್ಲಿಮರನ್ನು ಅನ್ಸಾರ್ ಎಂದು ಕರೆಯಲಾಗುತ್ತದೆ.

ثُمَّ لَا يُنصَرُونَ ﴿١٢﴾

ಅವರಿಗೆ ಸಹಾಯ ಮಾಡುವುದೂ ಇಲ್ಲ. ಇವರು ಅವರಿಗೆ ಸಹಾಯ ಮಾಡಲು ಬಂದರೂ ಇವರು ಖಂಡಿತವಾಗಿಯೂ ಬೆನ್ನು ತೋರಿಸಿ ಓಡುತ್ತಾರೆ. ನಂತರ ಅವರಿಗೆ ಯಾವುದೇ ಸಹಾಯವೂ ದೊರೆಯುವುದಿಲ್ಲ.

لَأَنتُمْ أَشَدُّ رَهْبَةً فِي صُدُورِهِم مِّنَ ٱللَّهِ ۚ ذَٰلِكَ بِأَنَّهُمْ قَوْمٌ لَّا يَفْقَهُونَ ﴿١٣﴾

13. ಅವರ ಹೃದಯಗಳಲ್ಲಿ ಅಲ್ಲಾಹನಿಗಿಂತಲೂ ಹೆಚ್ಚು ನಿಮ್ಮ ಬಗ್ಗೆ ಭಯವಿದೆ. ಅದೇಕೆಂದರೆ, ಅವರು (ಸತ್ಯಸಂಗತಿಯನ್ನು) ಅರ್ಥ-ಮಾಡಿಕೊಳ್ಳದ ಜನರಾಗಿದ್ದಾರೆ.

لَا يُقَٰتِلُونَكُمْ جَمِيعًا إِلَّا فِي قُرًى مُّحَصَّنَةٍ أَوْ مِن وَرَآءِ جُدُرٍۭ ۚ بَأْسُهُم بَيْنَهُمْ شَدِيدٌ ۚ تَحْسَبُهُمْ جَمِيعًا وَقُلُوبُهُمْ شَتَّىٰ ۚ ذَٰلِكَ بِأَنَّهُمْ قَوْمٌ لَّا يَعْقِلُونَ ﴿١٤﴾

14. ಅವರೆಲ್ಲರೂ ಒಟ್ಟಾಗಿಯೂ ಕೂಡ ನಿಮ್ಮೊಡನೆ ಯುದ್ಧ ಮಾಡಲಾರರು—ಸುಭದ್ರ ಕೋಟೆಗಳಿರುವ ನಗರಗಳಿಂದ ಅಥವಾ ಗೋಡೆಗಳ ಹಿಂಭಾಗದಿಂದ ಹೊರತು. ಅವರೊಳಗಿನ ಆಂತರಿಕ ಕಲಹವು ಬಹಳ ತೀಕ್ಷ್ಣವಾಗಿದೆ. ಅವರು ಒಗ್ಗಟ್ಟಿನಲ್ಲಿ-ದ್ದಾರೆಂದು ನೀವು ಭಾವಿಸುತ್ತೀರಿ. ಆದರೆ ಅವರ ಹೃದಯಗಳು ಭಿನ್ನವಾಗಿವೆ. ಅದೇಕೆಂದರೆ, ಅವರು (ಸತ್ಯಸಂಗತಿಯನ್ನು) ಅರ್ಥ-ಮಾಡಿಕೊಳ್ಳದ ಜನರಾಗಿದ್ದಾರೆ.

كَمَثَلِ ٱلَّذِينَ مِن قَبْلِهِمْ قَرِيبًا ۖ ذَاقُوا۟ وَبَالَ أَمْرِهِمْ وَلَهُمْ عَذَابٌ أَلِيمٌ ﴿١٥﴾

15. (ಅವರ ಸ್ಥಿತಿಯು) ಅವರಿಗಿಂತ ಸ್ವಲ್ಪ ಮೊದಲಿನವರ ಸ್ಥಿತಿಯಂತೆ![1] ಅವರು ತಮ್ಮ ಕಾರ್ಯದ ದುಷ್ಫಲವನ್ನು ಅನುಭವಿಸಿದರು. ಅವರಿಗೆ ವೇದನಾಭರಿತ ಶಿಕ್ಷೆಯಿದೆ.

كَمَثَلِ ٱلشَّيْطَٰنِ إِذْ قَالَ لِلْإِنسَٰنِ ٱكْفُرْ فَلَمَّا كَفَرَ قَالَ إِنِّي بَرِيٓءٌ مِّنكَ إِنِّيٓ أَخَافُ ٱللَّهَ رَبَّ ٱلْعَٰلَمِينَ ﴿١٦﴾

16. ಶೈತಾನನ ಸ್ಥಿತಿಯಂತೆ! ಅವನು ಮನುಷ್ಯನೊಡನೆ "ಸತ್ಯನಿಷೇಧಿಯಾಗು" ಎಂದು ಹೇಳಿದ ಸಂದರ್ಭ. ಮನುಷ್ಯ ಸತ್ಯ-ನಿಷೇಧಿಯಾದಾಗ ಅವನು ಹೇಳುತ್ತಾನೆ: "ನಿಶ್ಚಯವಾಗಿಯೂ ನಾನು ನಿನ್ನಿಂದ ದೂರ ಸರಿದಿದ್ದೇನೆ. ನಿಶ್ಚಯವಾಗಿಯೂ ನಾನು ಸರ್ವಲೋಕಗಳ ಪರಿಪಾಲಕನಾದ ಅಲ್ಲಾಹನನ್ನು ಭಯಪಡುತ್ತೇನೆ."

فَكَانَ عَٰقِبَتَهُمَآ أَنَّهُمَا فِي ٱلنَّارِ خَٰلِدَيْنِ فِيهَا ۚ وَذَٰلِكَ جَزَٰٓؤُا۟ ٱلظَّٰلِمِينَ ﴿١٧﴾

17. ಹೀಗೆ ಅವರಿಬ್ಬರ ಅಂತ್ಯವು ಅವರಿಬ್ಬರೂ ನರಕದಲ್ಲಿ ಶಾಶ್ವತವಾಗಿ ವಾಸಿಸುವುದಾಗಿದೆ. ಅದು ಅಕ್ರಮಿಗಳಿಗಿರುವ ಪ್ರತಿಫಲವಾಗಿದೆ.

يَٰٓأَيُّهَا ٱلَّذِينَ ءَامَنُوا۟ ٱتَّقُوا۟ ٱللَّهَ وَلْتَنظُرْ نَفْسٌ مَّا قَدَّمَتْ لِغَدٍ ۖ وَٱتَّقُوا۟ ٱللَّهَ ۚ إِنَّ ٱللَّهَ خَبِيرٌۢ بِمَا تَعْمَلُونَ ﴿١٨﴾

18. ಓ ಸತ್ಯವಿಶ್ವಾಸಿಗಳೇ! ಅಲ್ಲಾಹನನ್ನು ಭಯಪಡಿರಿ. ಪ್ರತಿಯೊಬ್ಬರೂ ನಾಳೆಗಾಗಿ (ಪುನರುತ್ಥಾನ ದಿನಕ್ಕಾಗಿ) ಏನು ಮಾಡಿದ್ದೇನೆಂದು ನೋಡಿಕೊಳ್ಳಲಿ. ಅಲ್ಲಾಹನನ್ನು ಭಯಪಡಿರಿ. ಅಲ್ಲಾಹು ನೀವು ಮಾಡುತ್ತಿರುವ ಕರ್ಮಗಳ ಬಗ್ಗೆ ಸೂಕ್ಷ್ಮಜ್ಞಾನವುಳ್ಳವನಾಗಿದ್ದಾನೆ.

وَلَا تَكُونُوا۟ كَٱلَّذِينَ نَسُوا۟ ٱللَّهَ فَأَنسَىٰهُمْ

19. ನೀವು ಅಲ್ಲಾಹನನ್ನು (ಅಲ್ಲಾಹನ ನಿಯಮಗಳನ್ನು) ಮರೆತುಬಿಟ್ಟ

[1] ಅಂದರೆ ಬದ್ರ್ ಯುದ್ಧದಲ್ಲಿ ಸೋತು ಸುಣ್ಣವಾಗಿ ಹೋದ ಕುರೈಶರು, ಅಥವಾ ಯಹೂದಿಗಳ ಇನ್ನೊಂದು ಗೋತ್ರವಾದ ಬನೂ ಕೈನುಕಾದವರು.

ಜನರಂತೆ ಆಗಬೇಡಿ. ಆಗ ಅವರು ಅವರನ್ನೇ ಮರೆಯುವಂತೆ ಅಲ್ಲಾಹು ಮಾಡಿದನು. ಅವರೇ ದುಷ್ಕರ್ಮಿಗಳು.

أَنفُسَهُمْۚ أُوْلَٰٓئِكَ هُمُ ٱلْفَٰسِقُونَ ١٩

---

20. ನರಕವಾಸಿಗಳು ಮತ್ತು ಸ್ವರ್ಗವಾಸಿಗಳು ಸಮಾನರಲ್ಲ. ಸ್ವರ್ಗವಾಸಿಗಳೇ ಯಶಸ್ವಿಯಾದವರು.

لَا يَسْتَوِيٓ أَصْحَٰبُ ٱلنَّارِ وَأَصْحَٰبُ ٱلْجَنَّةِۚ
أَصْحَٰبُ ٱلْجَنَّةِ هُمُ ٱلْفَآئِزُونَ ٢٠

---

21. ನಾವು ಈ ಕುರ್‌ಆನನ್ನು ಒಂದು ಪರ್ವತದ ಮೇಲೆ ಅವತೀರ್ಣ-ಗೊಳಿಸುತ್ತಿದ್ದರೆ ಅಲ್ಲಾಹನ ಭಯದಿಂದ ಅದು ವಿನಮ್ರವಾಗಿ ಒಡೆದು ಚೂರಾಗುವುದನ್ನು ನೀವು ಕಾಣುತ್ತಿದ್ದಿರಿ. ನಾವು ಜನರಿಗೆ ಈ ಉದಾಹರಣೆಗಳನ್ನು ವಿವರಿಸಿಕೊಡುತ್ತೇವೆ. ಅವರು ಆಲೋಚಿಸುವುದಕ್ಕಾಗಿ.

لَوْ أَنزَلْنَا هَٰذَا ٱلْقُرْءَانَ عَلَىٰ جَبَلٖ لَّرَأَيْتَهُۥ
خَٰشِعٗا مُّتَصَدِّعٗا مِّنْ خَشْيَةِ ٱللَّهِۚ وَتِلْكَ
ٱلْأَمْثَٰلُ نَضْرِبُهَا لِلنَّاسِ لَعَلَّهُمْ يَتَفَكَّرُونَ ٢١

---

22. ಅವನೇ ಅಲ್ಲಾಹು! ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ಅವನು ದೃಶ್ಯ-ಅದೃಶ್ಯ-ವನ್ನು ತಿಳಿದವನು. ಅವನು ಪರಮ ದಯಾಮಯನು ಮತ್ತು ಕರುಣಾನಿಧಿಯಾಗಿದ್ದಾನೆ.

هُوَ ٱللَّهُ ٱلَّذِي لَآ إِلَٰهَ إِلَّا هُوَۖ عَٰلِمُ ٱلْغَيْبِ
وَٱلشَّهَٰدَةِۖ هُوَ ٱلرَّحْمَٰنُ ٱلرَّحِيمُ ٢٢

---

23. ಅವನೇ ಅಲ್ಲಾಹು! ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ಅವನು ಸಾಮ್ರಾಟನು, ಪರಮ ಪರಿಶುದ್ಧನು, (ಎಲ್ಲಾ ಕುಂದು-ಕೊರತೆಗಳಿಂದ ಮತ್ತು ಅಪೂರ್ಣತೆಗಳಿಂದ) ಸುರಕ್ಷಿತನು, ಅಭಯದಾತನು, ಮೇಲ್ನೋಟ ವಹಿಸುವವನು, ಪ್ರಬಲನು, ಸರ್ವಾಧಿಕಾರಿ ಮತ್ತು ಮಹಾಮಹಿಮನು. ಅವರು ಮಾಡುವ ಸಹಭಾಗಿತ್ವ (ಶಿರ್ಕ್) ದಿಂದ ಅಲ್ಲಾಹು ಎಷ್ಟೋ ಪರಿಶುದ್ಧನಾಗಿದ್ದಾನೆ.

هُوَ ٱللَّهُ ٱلَّذِي لَآ إِلَٰهَ إِلَّا هُوَ ٱلْمَلِكُ ٱلْقُدُّوسُ
ٱلسَّلَٰمُ ٱلْمُؤْمِنُ ٱلْمُهَيْمِنُ ٱلْعَزِيزُ ٱلْجَبَّارُ
ٱلْمُتَكَبِّرُۚ سُبْحَٰنَ ٱللَّهِ عَمَّا يُشْرِكُونَ ٢٣

---

24. ಅವನೇ ಅಲ್ಲಾಹು! ಸೃಷ್ಟಿಕರ್ತನು, ಅಸ್ತಿತ್ವವನ್ನು ನೀಡುವವನು ಮತ್ತು ರೂಪ ನೀಡುವವನು. ಅವನಿಗೆ ಅತ್ಯುತ್ತಮವಾದ ಹೆಸರುಗಳಿವೆ. ಭೂಮ್ಯಾಕಾಶಗಳಲ್ಲಿರುವ ಎಲ್ಲಾ ವಸ್ತುಗಳೂ ಅವನ ಪರಿಶುದ್ಧಿಯನ್ನು ಕೊಂಡಾಡುತ್ತಿವೆ. ಅವನು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

هُوَ ٱللَّهُ ٱلْخَٰلِقُ ٱلْبَارِئُ ٱلْمُصَوِّرُۖ لَهُ ٱلْأَسْمَآءُ
ٱلْحُسْنَىٰۚ يُسَبِّحُ لَهُۥ مَا فِي ٱلسَّمَٰوَٰتِ وَٱلْأَرْضِۖ
وَهُوَ ٱلْعَزِيزُ ٱلْحَكِيمُ ٢٤

# 60. ಅಲ್-ಮುಮ್ತಹನ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಓ ಸತ್ಯವಿಶ್ವಾಸಿಗಳೇ! ನನ್ನ ಮತ್ತು ನಿಮ್ಮ ವೈರಿಗಳನ್ನು ಮಿತ್ರರನ್ನಾಗಿ ಮಾಡಿಕೊಳ್ಳಬೇಡಿ. ನೀವು ಅವರೊಡನೆ ಮೈತ್ರಿ ಮಾಡಿಕೊಂಡು ಅವರಿಗೆ ಸಂದೇಶವನ್ನು ಕಳುಹಿಸುತ್ತೀರಿ. ನಿಮ್ಮ ಬಳಿಗೆ ಬಂದಿರುವ ಸತ್ಯವನ್ನು ಅವರು ನಿಷೇಧಿಸಿದ್ದಾರೆ. ನೀವು ನಿಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ವಿಶ್ವಾಸವಿಡುತ್ತೀರಿ ಎಂಬ ಕಾರಣದಿಂದ ಅವರು ಸಂದೇಶವಾಹಕರನ್ನು ಮತ್ತು ನಿಮ್ಮನ್ನು ಊರಿನಿಂದ ಗಡೀಪಾರು ಮಾಡುತ್ತಿದ್ದಾರೆ. ನೀವು ನನ್ನ ಮಾರ್ಗದಲ್ಲಿ ಯುದ್ಧ ಮಾಡಲು ಹೊರಟಿದ್ದರೆ ಮತ್ತು ನನ್ನ ಸಂಪ್ರೀತಿಯನ್ನು ಪಡೆಯುವುದು ನಿಮ್ಮ ಉದ್ದೇಶವಾಗಿದ್ದರೆ (ಅವರೊಂದಿಗೆ ಮೈತ್ರಿ ಮಾಡಿಕೊಳ್ಳಬೇಡಿ). ನೀವು ರಹಸ್ಯವಾಗಿ ಅವರಿಗೆ ಪ್ರೀತಿಯ ಸಂದೇಶವನ್ನು ಕಳುಹಿಸುತ್ತಿದ್ದೀರಿ. ನೀವು ಮುಚ್ಚಿಡುವುದನ್ನು ಮತ್ತು ಬಹಿರಂಗಪಡಿಸುವುದನ್ನು ನಾನು ಬಹಳ ಚೆನ್ನಾಗಿ ತಿಳಿದಿದ್ದೇನೆ. ನಿಮ್ಮಲ್ಲಿ ಯಾರು ಹೀಗೆ ಮಾಡುತ್ತಾನೋ ಅವನು ನೇರ ಮಾರ್ಗದಿಂದ ತಪ್ಪಿಹೋಗಿದ್ದಾನೆ.[1]

يَٰٓأَيُّهَا ٱلَّذِينَ ءَامَنُواْ لَا تَتَّخِذُواْ عَدُوِّي وَعَدُوَّكُمۡ أَوۡلِيَآءَ تُلۡقُونَ إِلَيۡهِم بِٱلۡمَوَدَّةِ وَقَدۡ كَفَرُواْ بِمَا جَآءَكُم مِّنَ ٱلۡحَقِّ يُخۡرِجُونَ ٱلرَّسُولَ وَإِيَّاكُمۡ أَن تُؤۡمِنُواْ بِٱللَّهِ رَبِّكُمۡ إِن كُنتُمۡ خَرَجۡتُمۡ جِهَٰدٗا فِي سَبِيلِي وَٱبۡتِغَآءَ مَرۡضَاتِيۚ تُسِرُّونَ إِلَيۡهِم بِٱلۡمَوَدَّةِ وَأَنَا۠ أَعۡلَمُ بِمَآ أَخۡفَيۡتُمۡ وَمَآ أَعۡلَنتُمۡۚ وَمَن يَفۡعَلۡهُ مِنكُمۡ فَقَدۡ ضَلَّ سَوَآءَ ٱلسَّبِيلِ ١

2. ಅವರು ನಿಮ್ಮ ಮೇಲೆ ಪ್ರಾಬಲ್ಯ ಸಾಧಿಸಿದರೆ ನಿಮ್ಮ ಪ್ರತ್ಯಕ್ಷ ವೈರಿಗಳಾಗಿ ಬಿಡುತ್ತಾರೆ. ಅವರು ಕೆಟ್ಟ ಉದ್ದೇಶದೊಂದಿಗೆ ನಿಮ್ಮ ವಿರುದ್ಧ ಅವರ ಕೈಗಳನ್ನು ಮತ್ತು ನಾಲಗೆಗಳನ್ನು ಚಾಚುತ್ತಾರೆ. ನೀವು ಕೂಡ ಸತ್ಯನಿಷೇಧಿಗಳಾಗಬೇಕೆಂದು ಅವರು ಬಯಸುತ್ತಾರೆ.

إِن يَثۡقَفُوكُمۡ يَكُونُواْ لَكُمۡ أَعۡدَآءٗ وَيَبۡسُطُوٓاْ إِلَيۡكُمۡ أَيۡدِيَهُمۡ وَأَلۡسِنَتَهُم بِٱلسُّوٓءِ وَوَدُّواْ لَوۡ تَكۡفُرُونَ ٢

[1] ಹುದೈಬಿಯಾ ಒಪ್ಪಂದದ ಬಳಿಕ ಮಕ್ಕಾದ ಸತ್ಯನಿಷೇಧಿಗಳು ಒಪ್ಪಂದವನ್ನು ಉಲ್ಲಂಘಿಸಿದರು. ಆಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅವರ ವಿರುದ್ಧ ಯುದ್ಧದ ತಯಾರಿ ನಡೆಸಿದರು. ಪ್ರವಾದಿಯ ಅನುಯಾಯಿಗಳಲ್ಲಿ ಒಬ್ಬರಾಗಿದ್ದ ಹಾತಿಬ್ ಬಿನ್ ಅಬೂ ಸಅಲಬ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ಮಕ್ಕಾದಿಂದ ಹಿಜ್ರ (ವಲಸೆ) ಮಾಡಿದ ಸಹಾಬಿಯಾಗಿದ್ದರು. ಇವರು ಬದ್ರ್ ಯುದ್ಧದಲ್ಲಿ ಪಾಲ್ಗೊಂಡಿದ್ದರು. ಇವರಿಗೆ ಮಕ್ಕಾದ ಕುರೈಶರೊಡನೆ ಯಾವುದೇ ಸಂಬಂಧವಿರದಿದ್ದರೂ, ಇವರ ಮಡದಿ ಮಕ್ಕಳು ಮಕ್ಕಾದಲ್ಲಿದ್ದರು. ಮಕ್ಕಾದ ಸತ್ಯನಿಷೇಧಿಗಳು ತನ್ನ ಮಡದಿ ಮಕ್ಕಳನ್ನು ಚೆನ್ನಾಗಿ ನೋಡಿಕೊಳ್ಳಲಿ ಎಂಬ ಉದ್ದೇಶದಿಂದ ಅವರು ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಯುದ್ಧದ ತಯಾರಿ ನಡೆಸುವ ಸುದ್ದಿಯನ್ನು ರಹಸ್ಯವಾಗಿ ಮಕ್ಕಾದ ಸತ್ಯನಿಷೇಧಿಗಳಿಗೆ ತಿಳಿಸಿದರು. ಇದಕ್ಕಾಗಿ ಅವರು ಒಬ್ಬ ಮಹಿಳೆಯನ್ನು ಗೊತ್ತುಪಡಿಸಿ ಆಕೆಯೊಡನೆ ಮಕ್ಕಾದವರಿಗೆ ಒಂದು ಪತ್ರವನ್ನು ಕಳುಹಿಸಿದರು. ಈ ವಿಷಯ ದೇವವಾಣಿಯ ಮೂಲಕ ಪ್ರವಾದಿಯವರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ತಿಳಿಯಿತು. ಅವರು ಸಹಾಬಿಗಳನ್ನು ಕಳುಹಿಸಿ ಆ ಮಹಿಳೆಯಿಂದ ಪತ್ರವನ್ನು ಕಿತ್ತುಕೊಂಡು ಬರುವಂತೆ ಹೇಳಿದರು. ನಂತರ ಹಾತಿಬ್ (ಅವರ ಬಗ್ಗೆ ಅಲ್ಲಾಹು ಸಂಪ್ರೀತನಾಗಲಿ) ರನ್ನು ವಿಚಾರಿಸಿದರು. ಹಾತಿಬ್ ತನ್ನ ಪ್ರಾಮಾಣಿಕ ಉದ್ದೇಶವನ್ನು ಮುಚ್ಚುಮರೆಯಿಲ್ಲದೆ ವಿವರಿಸಿದಾಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅವರನ್ನು ಕ್ಷಮಿಸಿದರು. ಮುಂದೆ ಸತ್ಯವಿಶ್ವಾಸಿಗಳಲ್ಲಿ ಯಾರೂ ಇಂತಹ ಕೆಲಸ ಮಾಡಬಾರದೆಂಬ ಉದ್ದೇಶದಿಂದ ಅಲ್ಲಾಹು ಈ ವಚನಗಳನ್ನು ಅವತೀರ್ಣಗೊಳಿಸಿದನು.

3. ಪುನರುತ್ಥಾನ ದಿನದಂದು ನಿಮ್ಮ ರಕ್ತ ಸಂಬಂಧಗಳು ಮತ್ತು ನಿಮ್ಮ ಮಕ್ಕಳು ನಿಮಗೆ ಪ್ರಯೋಜನಪಡುವುದಿಲ್ಲ. ಅಲ್ಲಾಹು ನಿಮ್ಮ ನಡುವೆ ತೀರ್ಪು ನೀಡುತ್ತಾನೆ. ಅಲ್ಲಾಹು ನೀವು ಮಾಡುತ್ತಿರುವ ಕರ್ಮಗಳನ್ನು ನೋಡುತ್ತಿದ್ದಾನೆ.

لَن تَنفَعَكُمۡ أَرۡحَامُكُمۡ وَلَآ أَوۡلَٰدُكُمۡۚ يَوۡمَ ٱلۡقِيَٰمَةِ يَفۡصِلُ بَيۡنَكُمۡۚ وَٱللَّهُ بِمَا تَعۡمَلُونَ بَصِيرٞ ٣

4. ನಿಮಗೆ ಇಬ್ರಾಹೀಮರಲ್ಲಿ ಮತ್ತು ಅವರ ಸಂಗಡಿಗರಲ್ಲಿ ಅತ್ಯುತ್ತಮ ಮಾದರಿಯಿದೆ. ಅವರು ತಮ್ಮ ಜನರೊಂದಿಗೆ ಹೇಳಿದ ಸಂದರ್ಭ: "ನಿಶ್ಚಯವಾಗಿಯೂ ನಾವು ನಿಮ್ಮಿಂದ ಮತ್ತು ಅಲ್ಲಾಹನನ್ನು ಬಿಟ್ಟು ನೀವು ಆರಾಧಿಸುತ್ತಿರುವ ದೇವರುಗಳಿಂದ ಸಂಪೂರ್ಣ ದೂರವಾಗಿದ್ದೇವೆ. ನಾವು ನಿಮ್ಮ (ವಿಶ್ವಾಸ ನಂಬಿಕೆಗಳನ್ನು) ನಿಷೇಧಿಸಿದ್ದೇವೆ. ನೀವು ಅಲ್ಲಾಹನಲ್ಲಿ ಮಾತ್ರ ವಿಶ್ವಾಸವಿಡುವ ತನಕ ನಮ್ಮ ಮತ್ತು ನಿಮ್ಮ ನಡುವೆ ಶಾಶ್ವತ ವೈರ ಹಾಗೂ ವಿದ್ವೇಷವು ಬಹಿರಂಗವಾಗಿಬಿಟ್ಟಿದೆ." ಆದರೆ ಇಬ್ರಾಹೀಮರು ತಮ್ಮ ತಂದೆಯೊಡನೆ ಹೇಳಿದ ಈ ಮಾತುಗಳು ಇದಕ್ಕೆ ಹೊರತಾಗಿವೆ:[1] "ನಾನು ನಿಮಗೋಸ್ಕರ ಅಲ್ಲಾಹನಲ್ಲಿ ಖಂಡಿತ ಕ್ಷಮೆಯಾಚಿಸುತ್ತೇನೆ. ಅಲ್ಲಾಹನ ಮುಂದೆ ನಿಮಗೋಸ್ಕರ ಏನೂ ಮಾಡಲು ನನಗೆ ಸಾಧ್ಯವಿಲ್ಲ." ಓ ನಮ್ಮ ಪರಿಪಾಲಕನೇ! ನಾವು ನಿನ್ನಲ್ಲಿ ಭರವಸೆಯಿಟ್ಟಿದ್ದೇವೆ ಮತ್ತು ನಿನ್ನ ಕಡೆಗೆ ಮರಳಿದ್ದೇವೆ. ಮರಳಬೇಕಾದುದು ನಿನ್ನ ಕಡೆಗೇ ಆಗಿದೆ.

قَدۡ كَانَتۡ لَكُمۡ أُسۡوَةٌ حَسَنَةٞ فِيٓ إِبۡرَٰهِيمَ وَٱلَّذِينَ مَعَهُۥٓ إِذۡ قَالُواْ لِقَوۡمِهِمۡ إِنَّا بُرَءَٰٓؤُاْ مِنكُمۡ وَمِمَّا تَعۡبُدُونَ مِن دُونِ ٱللَّهِ كَفَرۡنَا بِكُمۡ وَبَدَا بَيۡنَنَا وَبَيۡنَكُمُ ٱلۡعَدَٰوَةُ وَٱلۡبَغۡضَآءُ أَبَدًا حَتَّىٰ تُؤۡمِنُواْ بِٱللَّهِ وَحۡدَهُۥٓ إِلَّا قَوۡلَ إِبۡرَٰهِيمَ لِأَبِيهِ لَأَسۡتَغۡفِرَنَّ لَكَ وَمَآ أَمۡلِكُ لَكَ مِنَ ٱللَّهِ مِن شَيۡءٖۖ رَّبَّنَا عَلَيۡكَ تَوَكَّلۡنَا وَإِلَيۡكَ أَنَبۡنَا وَإِلَيۡكَ ٱلۡمَصِيرُ ٤

5. ನಮ್ಮ ಪರಿಪಾಲಕನೇ! ನಮ್ಮನ್ನು ಸತ್ಯನಿಷೇಧಿಗಳ ಪರೀಕ್ಷೆಗೆ ಗುರಿಯಾಗಿಸಬೇಡ. ನಮ್ಮ ಪರಿಪಾಲಕನೇ! ನಮ್ಮನ್ನು ಕ್ಷಮಿಸು. ನಿಶ್ಚಯವಾಗಿಯೂ ನೀನು ಪ್ರಬಲನು ಮತ್ತು ವಿವೇಕಪೂರ್ಣನಾಗಿರುವೆ.

رَبَّنَا لَا تَجۡعَلۡنَا فِتۡنَةٗ لِّلَّذِينَ كَفَرُواْ وَٱغۡفِرۡ لَنَا رَبَّنَآۖ إِنَّكَ أَنتَ ٱلۡعَزِيزُ ٱلۡحَكِيمُ ٥

6. ನಿಶ್ಚಯವಾಗಿಯೂ ನಿಮಗೆ ಅವರಲ್ಲಿ ಅತ್ಯುತ್ತಮ ಮಾದರಿಯಿದೆ. ವಿಶೇಷವಾಗಿ ಅಲ್ಲಾಹನನ್ನು ಮತ್ತು ಅಂತ್ಯದಿನವನ್ನು ಭೇಟಿಯಾಗುವ ನಿರೀಕ್ಷೆಯಿರುವವರಿಗೆ. ಆದರೆ ಯಾರಾದರೂ ವಿಮುಖನಾಗುವುದಾದರೆ ನಿಶ್ಚಯವಾಗಿಯೂ ಅಲ್ಲಾಹು ನಿರಪೇಕ್ಷನು ಮತ್ತು ಸ್ತುತ್ಯರ್ಹನಾಗಿದ್ದಾನೆ.

لَقَدۡ كَانَ لَكُمۡ فِيهِمۡ أُسۡوَةٌ حَسَنَةٞ لِّمَن كَانَ يَرۡجُواْ ٱللَّهَ وَٱلۡيَوۡمَ ٱلۡأٓخِرَۚ وَمَن يَتَوَلَّ فَإِنَّ ٱللَّهَ هُوَ ٱلۡغَنِيُّ ٱلۡحَمِيدُ ٦

7. ಅಲ್ಲಾಹು ನಿಮ್ಮ ಮತ್ತು ನಿಮ್ಮ ವೈರಿಗಳ ನಡುವೆ ಪ್ರೀತಿಯನ್ನು ಹಾಕಬಹುದು. ಅಲ್ಲಾಹನಿಗೆ ಸಾಮರ್ಥ್ಯವಿದೆ.[2] ಅಲ್ಲಾಹು

عَسَى ٱللَّهُ أَن يَجۡعَلَ بَيۡنَكُمۡ وَبَيۡنَ ٱلَّذِينَ عَادَيۡتُم مِّنۡهُم مَّوَدَّةٗۚ وَٱللَّهُ قَدِيرٞۚ وَٱللَّهُ غَفُورٞ

[1] ಅಂದರೆ "ನಾನು ನಿಮಗೋಸ್ಕರ ಅಲ್ಲಾಹನಲ್ಲಿ ಖಂಡಿತ ಕ್ಷಮೆಯಾಚಿಸುತ್ತೇನೆ" ಎಂದು ಇಬ್ರಾಹೀಮರು (ಅವರ ಮೇಲೆ ಶಾಂತಿಯಿರಲಿ) ಹೇಳಿದ ಮಾತಿನಲ್ಲಿ ಸತ್ಯವಿಶ್ವಾಸಿಗಳಿಗೆ ಮಾದರಿಯಿಲ್ಲ.

[2] ಅಂದರೆ ಅವರು ಮುಸ್ಲಿಮರಾಗುವಂತೆ ಮಾಡಲು ಅಲ್ಲಾಹನಿಗೆ ಸಾಧ್ಯವಿದೆ. ಮಕ್ಕಾ ವಿಜಯದ ನಂತರ ಇದು ಸತ್ಯವಾಯಿತು. ಮುಸ್ಲಿಮರ ವೈರಿಗಳಾಗಿದ್ದವರು ತಂಡೋಪತಂಡವಾಗಿ ಇಸ್ಲಾಂ ಸ್ವೀಕರಿಸಿದರು.

رَّحِيمٌ ۞ ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

---

8. ಧರ್ಮದ ವಿಷಯದಲ್ಲಿ ನಿಮ್ಮ ವಿರುದ್ಧ ಯುದ್ಧ ಮಾಡದವರು ಮತ್ತು ನಿಮ್ಮನ್ನು ನಿಮ್ಮ ಊರಿನಿಂದ ಗಡೀಪಾರು ಮಾಡದವರು ಯಾರೋ—ಅವರೊಡನೆ ಅತ್ಯುತ್ತಮವಾಗಿ ವರ್ತಿಸುವುದನ್ನು ಮತ್ತು ಅವರೊಡನೆ ನ್ಯಾಯಯುತವಾಗಿ ವರ್ತಿಸುವುದನ್ನು ಅಲ್ಲಾಹು ನಿಮಗೆ ವಿರೋಧಿಸುವುದಿಲ್ಲ. ನಿಶ್ಚಯವಾಗಿಯೂ ನ್ಯಾಯಯುತವಾಗಿ ವರ್ತಿಸುವವರನ್ನು ಅಲ್ಲಾಹು ಇಷ್ಟಪಡುತ್ತಾನೆ.

لَّا يَنْهَىٰكُمُ ٱللَّهُ عَنِ ٱلَّذِينَ لَمْ يُقَٰتِلُوكُمْ فِى ٱلدِّينِ وَلَمْ يُخْرِجُوكُم مِّن دِيَٰرِكُمْ أَن تَبَرُّوهُمْ وَتُقْسِطُوٓا۟ إِلَيْهِمْ ۚ إِنَّ ٱللَّهَ يُحِبُّ ٱلْمُقْسِطِينَ ۞

---

9. ಧರ್ಮದ ವಿಷಯದಲ್ಲಿ ನಿಮ್ಮ ವಿರುದ್ಧ ಯುದ್ಧ ಮಾಡುವವರು, ನಿಮ್ಮನ್ನು ನಿಮ್ಮ ಊರಿನಿಂದ ಗಡೀಪಾರು ಮಾಡುವವರು ಮತ್ತು ನಿಮ್ಮನ್ನು ಗಡೀಪಾರು ಮಾಡಲು ಪರಸ್ಪರ ಸಹಕರಿಸುವವರು ಯಾರೋ ಅವರೊಂದಿಗೆ ಮೈತ್ರಿ ಮಾಡುವುದನ್ನು ಮಾತ್ರ ಅಲ್ಲಾಹು ನಿಮಗೆ ವಿರೋಧಿಸುತ್ತಾನೆ. ಯಾರು ಅವರನ್ನು ಮಿತ್ರರನ್ನಾಗಿ ಮಾಡಿಕೊಳ್ಳುತ್ತಾರೋ ಅವರೇ ಅಕ್ರಮಿಗಳು.

إِنَّمَا يَنْهَىٰكُمُ ٱللَّهُ عَنِ ٱلَّذِينَ قَٰتَلُوكُمْ فِى ٱلدِّينِ وَأَخْرَجُوكُم مِّن دِيَٰرِكُمْ وَظَٰهَرُوا۟ عَلَىٰٓ إِخْرَاجِكُمْ أَن تَوَلَّوْهُمْ ۚ وَمَن يَتَوَلَّهُمْ فَأُو۟لَٰٓئِكَ هُمُ ٱلظَّٰلِمُونَ ۞

---

10. ಓ ಸತ್ಯವಿಶ್ವಾಸಿಗಳೇ! ನಿಮ್ಮ ಬಳಿಗೆ ಸತ್ಯವಿಶ್ವಾಸಿ ಮಹಿಳೆಯರು ಹಿಜ್ರ (ವಲಸೆ) ಮಾಡಿ ಬಂದರೆ ಅವರನ್ನು ಪರೀಕ್ಷಿಸಿರಿ. ಅಲ್ಲಾಹನಿಗೆ ಅವರ ವಿಶ್ವಾಸದ ಬಗ್ಗೆ ಬಹಳ ಚೆನ್ನಾಗಿ ತಿಳಿದಿದೆ. ಅವರು ಸತ್ಯವಿಶ್ವಾಸಿಗಳೆಂದು ನಿಮಗೆ ಖಾತ್ರಿಯಾದರೆ ಅವರನ್ನು ಸತ್ಯನಿಷೇಧಿಗಳ ಬಳಿಗೆ ಮರಳಿ ಕಳುಹಿಸಬೇಡಿ. ಈ ಮಹಿಳೆಯರು ಅವರಿಗೆ (ಸತ್ಯನಿಷೇಧಿಗಳಿಗೆ) ಧರ್ಮಸಮ್ಮತವಲ್ಲ. ಅವರು ಈ ಮಹಿಳೆಯರಿಗೆ ಧರ್ಮಸಮ್ಮತವಲ್ಲ. ಆ ಸತ್ಯನಿಷೇಧಿಗಳು ಮಾಡಿದ ಖರ್ಚನ್ನು ಅವರಿಗೆ ನೀಡಿರಿ. ನಂತರ ನೀವು ಈ ಮಹಿಳೆಯರಿಗೆ ಅವರ ಮಹರ್ (ವಧುದಕ್ಷಿಣೆಯನ್ನು) ನೀಡಿ ವಿವಾಹವಾಗುವುದ-ರಲ್ಲಿ ನಿಮಗೆ ದೋಷವಿಲ್ಲ.[1] ಸತ್ಯನಿಷೇಧಿ ಮಹಿಳೆಯರೊಂದಿಗಿನ ವಿವಾಹ ಕರಾರನ್ನು ಬಳಿಯಲ್ಲಿಟ್ಟುಕೊಳ್ಳಬೇಡಿ.[2] ನೀವು ಖರ್ಚು

يَٰٓأَيُّهَا ٱلَّذِينَ ءَامَنُوٓا۟ إِذَا جَآءَكُمُ ٱلْمُؤْمِنَٰتُ مُهَٰجِرَٰتٍ فَٱمْتَحِنُوهُنَّ ۖ ٱللَّهُ أَعْلَمُ بِإِيمَٰنِهِنَّ ۖ فَإِنْ عَلِمْتُمُوهُنَّ مُؤْمِنَٰتٍ فَلَا تَرْجِعُوهُنَّ إِلَى ٱلْكُفَّارِ ۖ لَا هُنَّ حِلٌّ لَّهُمْ وَلَا هُمْ يَحِلُّونَ لَهُنَّ ۖ وَءَاتُوهُم مَّآ أَنفَقُوا۟ ۚ وَلَا جُنَاحَ عَلَيْكُمْ أَن تَنكِحُوهُنَّ إِذَآ ءَاتَيْتُمُوهُنَّ أُجُورَهُنَّ ۚ وَلَا تُمْسِكُوا۟ بِعِصَمِ ٱلْكَوَافِرِ وَسْـَٔلُوا۟ مَآ أَنفَقْتُمْ وَلْيَسْـَٔلُوا۟ مَآ أَنفَقُوا۟ ۚ ذَٰلِكُمْ حُكْمُ ٱللَّهِ ۖ يَحْكُمُ بَيْنَكُمْ ۚ وَٱللَّهُ عَلِيمٌ حَكِيمٌ ۞

---

[1] ಹುದೈಬಿಯಾ ಒಪ್ಪಂದದ ಒಂದು ಷರತ್ತಿನ ಪ್ರಕಾರ ಮಕ್ಕಾದಿಂದ ಯಾರಾದರೂ ಮುಸಲ್ಮಾನರ ಬಳಿಗೆ ಬಂದರೆ ಅವರನ್ನು ಮಕ್ಕಾಗೆ ಮರಳಿ ಕಳುಹಿಸಬೇಕು. ಇಂತಹ ಸ್ಥಿತಿಯಲ್ಲಿ ಸತ್ಯನಿಷೇಧಿ ಮಹಿಳೆಯರು ಇಸ್ಲಾಂ ಸ್ವೀಕರಿಸಿ ಮುಸಲ್ಮಾನರ ಬಳಿಗೆ ಬಂದರೆ ಏನು ಮಾಡಬೇಕೆಂದು ಈ ವಚನದಲ್ಲಿ ಹೇಳಲಾಗಿದೆ. ಮುಸ್ಲಿಮರು ಅವರನ್ನು ಸತ್ಯನಿಷೇಧಿಗಳ ಬಳಿಗೆ ಮರಳಿ ಕಳುಹಿಸಬಾರದು. ಅವರು ಸತ್ಯನಿಷೇಧಿಗಳಿಗೆ ಧರ್ಮ-ಸಮ್ಮತವಲ್ಲ. ಅವರ ಗಂಡಂದಿರು ಅವರಿಗೆ ನೀಡಿದ ಮಹರ್ ಅವರಿಗೆ ವಾಪಸು ಕೊಟ್ಟು ಅವರನ್ನು ವಿಚ್ಛೇದಿಸಬೇಕು. ಇದ್ದ ಕಳೆದ ನಂತರ ಮುಸ್ಲಿಮರಿಗೆ ಆಕೆಯನ್ನು ಮಹರ್ ನೀಡಿ ವಿವಾಹವಾಗಬಹುದು. ಅವರನ್ನು ಪರೀಕ್ಷಿಸಬೇಕು ಎಂದರೆ ಅವರು ಯಾವ ಉದ್ದೇಶದಿಂದ ಬಂದಿದ್ದಾರೆಂದು ತನಿಖೆ ಮಾಡಬೇಕು ಎಂದರ್ಥ.

[2] ಅಂದರೆ ಮುಸಲ್ಮಾನರ ಪತ್ನಿಯರಲ್ಲಿ ಯಾರಾದರೂ ಸತ್ಯನಿಷೇಧಿಯಾಗಿದ್ದರೆ ಅವಳೊಂದಿಗಿನ ದಾಂಪತ್ಯವನ್ನು ಮುಂದುವರಿಸಬಾರದು. ಆಕೆಗೆ ವಿಚ್ಛೇದನ ನೀಡಿ ಮಹರ್ ವಾಪಸು ಪಡೆಯಬೇಕು.

ಮಾಡಿದ್ದನ್ನು ಕೇಳಿ ಪಡೆಯಿರಿ. ಆ ಸತ್ಯನಿಷೇಧಿಗಳು ಏನು ಖರ್ಚು ಮಾಡಿದ್ದಾರೋ ಅದನ್ನು ಅವರು ಕೇಳಿ ಪಡೆಯಲಿ. ಇದು ಅಲ್ಲಾಹು ನಿಮ್ಮ ನಡುವೆ ತೀರ್ಪು ನೀಡುವ ಅವನ ತೀರ್ಪಾಗಿದೆ. ಅಲ್ಲಾಹು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ.

---

11. ನಿಮ್ಮ ಪತ್ನಿಯರಲ್ಲಿ ಯಾರಾದರೂ ನಿಮ್ಮಿಂದ ತಪ್ಪಿಸಿ ಸತ್ಯನಿಷೇಧಿಗಳ ಬಳಿಗೆ ಹೋಗಿ, ನಂತರ ನಿಮಗೆ ಅವರ (ಸತ್ಯನಿಷೇಧಿಗಳ) ಮೇಲೆ ಪ್ರತೀಕಾರ ಪಡೆಯುವ ಸಮಯ ಸಿಕ್ಕಿದರೆ, ಯಾರ ಪತ್ನಿಯರು ಓಡಿ ಹೋಗಿದ್ದಾರೋ ಅವರಿಗೆ ಅವರು ಖರ್ಚು ಮಾಡಿದ್ದಕ್ಕೆ ಸಮವಾದುದನ್ನು ನೀಡಿರಿ. ನೀವು ವಿಶ್ವಾಸವಿಡುವ ಆ ಅಲ್ಲಾಹನನ್ನು ಭಯಪಡಿರಿ.

وَإِن فَاتَكُمْ شَيْءٌ مِّنْ أَزْوَٰجِكُمْ إِلَى ٱلْكُفَّارِ فَعَاقَبْتُمْ فَـَٔاتُوا۟ ٱلَّذِينَ ذَهَبَتْ أَزْوَٰجُهُم مِّثْلَ مَآ أَنفَقُوا۟ ۚ وَٱتَّقُوا۟ ٱللَّهَ ٱلَّذِىٓ أَنتُم بِهِۦ مُؤْمِنُونَ ﴿١١﴾

---

12. ಓ ಪ್ರವಾದಿಯವರೇ! ಮಹಿಳೆಯರು ನಿಮ್ಮ ಬಳಿಗೆ ಬಂದು, ಅವರು ಅಲ್ಲಾಹನೊಂದಿಗೆ ಸಹಭಾಗಿತ್ವ (ಶಿರ್ಕ್) ಮಾಡುವುದಿಲ್ಲ, ಕಳ್ಳತನ ಮಾಡುವುದಿಲ್ಲ, ವ್ಯಭಿಚಾರ ಮಾಡುವುದಿಲ್ಲ, ತಮ್ಮ ಮಕ್ಕಳನ್ನು ಕೊಲ್ಲುವುದಿಲ್ಲ, ತಮ್ಮ ಕೈಕಾಲುಗಳ ಮುಂದೆ ಸುಳ್ಳಾರೋಪವನ್ನು ಸೃಷ್ಟಿಸಿ ತರುವುದಿಲ್ಲ ಮತ್ತು ಒಳಿತಿನ ಕಾರ್ಯದಲ್ಲಿ ನಿಮಗೆ ಅವಿಧೇಯತೆ ತೋರುವುದಿಲ್ಲ ಎಂದು ಹೇಳುತ್ತಾ ಪ್ರತಿಜ್ಞೆ ಮಾಡಿದರೆ, ಅವರ ಪ್ರತಿಜ್ಞೆಯನ್ನು ಸ್ವೀಕರಿಸಿರಿ ಮತ್ತು ಅವರಿಗೋಸ್ಕರ ಅಲ್ಲಾಹನಲ್ಲಿ ಕ್ಷಮೆಯಾಚಿಸಿರಿ. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

يَـٰٓأَيُّهَا ٱلنَّبِىُّ إِذَا جَآءَكَ ٱلْمُؤْمِنَـٰتُ يُبَايِعْنَكَ عَلَىٰٓ أَن لَّا يُشْرِكْنَ بِٱللَّهِ شَيْـًٔا وَلَا يَسْرِقْنَ وَلَا يَزْنِينَ وَلَا يَقْتُلْنَ أَوْلَـٰدَهُنَّ وَلَا يَأْتِينَ بِبُهْتَـٰنٍ يَفْتَرِينَهُۥ بَيْنَ أَيْدِيهِنَّ وَأَرْجُلِهِنَّ وَلَا يَعْصِينَكَ فِى مَعْرُوفٍ ۙ فَبَايِعْهُنَّ وَٱسْتَغْفِرْ لَهُنَّ ٱللَّهَ ۖ إِنَّ ٱللَّهَ غَفُورٌ رَّحِيمٌ ﴿١٢﴾

---

13. ಓ ಸತ್ಯವಿಶ್ವಾಸಿಗಳೇ! ಅಲ್ಲಾಹನ ಕೋಪಕ್ಕೆ ಪಾತ್ರರಾದ ಜನರೊಡನೆ ಮೈತ್ರಿ ಮಾಡಿಕೊಳ್ಳಬೇಡಿ. ಅವರು ಪರಲೋಕದ ವಿಷಯದಲ್ಲಿ ನಿರಾಶರಾಗಿದ್ದಾರೆ. ಸಮಾಧಿಯಲ್ಲಿರುವ ಜನರ ಬಗ್ಗೆ ಸತ್ಯನಿಷೇಧಿಗಳು ನಿರಾಶರಾದಂತೆ.

يَـٰٓأَيُّهَا ٱلَّذِينَ ءَامَنُوا۟ لَا تَتَوَلَّوْا۟ قَوْمًا غَضِبَ ٱللَّهُ عَلَيْهِمْ قَدْ يَئِسُوا۟ مِنَ ٱلْـَٔاخِرَةِ كَمَا يَئِسَ ٱلْكُفَّارُ مِنْ أَصْحَـٰبِ ٱلْقُبُورِ ﴿١٣﴾

# 61. ಅಸ್ಸಫ್ಫ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

---

1. ಭೂಮ್ಯಾಕಾಶಗಳಲ್ಲಿರುವುದೆಲ್ಲವೂ ಅಲ್ಲಾಹನ ಪರಿಶುದ್ಧಿಯನ್ನು ಕೊಂಡಾಡುತ್ತಿವೆ. ಅವನು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

سَبَّحَ لِلَّهِ مَا فِي ٱلسَّمَٰوَٰتِ وَمَا فِي ٱلۡأَرۡضِۖ وَهُوَ ٱلۡعَزِيزُ ٱلۡحَكِيمُ ١

---

2. ಓ ಸತ್ಯವಿಶ್ವಾಸಿಗಳೇ! ನೀವು ಮಾಡದ ಕಾರ್ಯವನ್ನು ನೀವೇಕೆ ಹೇಳುತ್ತೀರಿ?

يَٰٓأَيُّهَا ٱلَّذِينَ ءَامَنُواْ لِمَ تَقُولُونَ مَا لَا تَفۡعَلُونَ ٢

---

3. ನೀವು ಮಾಡದ ಕಾರ್ಯವನ್ನು ನೀವು ಹೇಳುವುದು ಅಲ್ಲಾಹು ಅತ್ಯಧಿಕ ದ್ವೇಷಿಸುವ ವಿಷಯವಾಗಿದೆ.

كَبُرَ مَقۡتًا عِندَ ٱللَّهِ أَن تَقُولُواْ مَا لَا تَفۡعَلُونَ ٣

---

4. ಅಲ್ಲಾಹನ ಮಾರ್ಗದಲ್ಲಿ ಸಾಲು ಸಾಲಾಗಿ ನಿಂತು ಯುದ್ಧ ಮಾಡುವವರನ್ನು ಅಲ್ಲಾಹು ಪ್ರೀತಿಸುತ್ತಾನೆ. ಅವರು ಸೀಸವನ್ನು ಎರಕ ಹೊಯ್ದು ಕಟ್ಟಿದ ಕಟ್ಟಡವೇನೋ ಎಂಬಂತೆ.

إِنَّ ٱللَّهَ يُحِبُّ ٱلَّذِينَ يُقَٰتِلُونَ فِي سَبِيلِهِۦ صَفّٗا كَأَنَّهُم بُنۡيَٰنٞ مَّرۡصُوصٞ ٤

---

5. ಮೂಸಾ ತಮ್ಮ ಜನರೊಡನೆ ಹೇಳಿದ ಸಂದರ್ಭ: "ನನ್ನ ಜನರೇ! ನೀವೇಕೆ ನನಗೆ ತೊಂದರೆ ಕೊಡುತ್ತೀರಿ? ನಾನು ನಿಮ್ಮ ಬಳಿಗೆ ಬಂದ ಅಲ್ಲಾಹನ ಸಂದೇಶವಾಹಕನೆಂದು ನಿಮಗೆ ಬಹಳ ಚೆನ್ನಾಗಿ ತಿಳಿದಿದೆ." ನಂತರ ಅವರು (ಜನರು) ಸತ್ಯದಿಂದ ವಿಚಲಿಸಿದಾಗ ಅಲ್ಲಾಹು ಅವರ ಹೃದಯಗಳನ್ನು ವಕ್ರಗೊಳಿಸಿದನು. ದುಷ್ಕರ್ಮಿಗಳಾದ ಜನರಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ.

وَإِذۡ قَالَ مُوسَىٰ لِقَوۡمِهِۦ يَٰقَوۡمِ لِمَ تُؤۡذُونَنِي وَقَد تَّعۡلَمُونَ أَنِّي رَسُولُ ٱللَّهِ إِلَيۡكُمۡۖ فَلَمَّا زَاغُوٓاْ أَزَاغَ ٱللَّهُ قُلُوبَهُمۡۚ وَٱللَّهُ لَا يَهۡدِي ٱلۡقَوۡمَ ٱلۡفَٰسِقِينَ ٥

---

6. ಮರ್ಯಮರ ಮಗ ಈಸಾ ಹೇಳಿದ ಸಂದರ್ಭ: "ಓ ಇಸ್ರಾಯೇಲ್ ಮಕ್ಕಳೇ! ನಾನು ನನಗಿಂತ ಮೊದಲು ಅವತೀರ್ಣವಾದ ತೌರಾತನ್ನು ದೃಢೀಕರಿಸಲು ಮತ್ತು ನನ್ನ ನಂತರ ಬರುವ ಅಹ್ಮದ್[1] ಎಂಬ ಹೆಸರಿನ ಒಬ್ಬ ಸಂದೇಶವಾಹಕರ ಬಗ್ಗೆ ನಿಮಗೆ ಸುವಾರ್ತೆ ತಿಳಿಸಲು ನಿಮ್ಮ ಬಳಿಗೆ ಕಳುಹಿಸಲಾಗಿರುವ ಅಲ್ಲಾಹನ ಸಂದೇಶ-ವಾಹಕನಾಗಿದ್ದೇನೆ." ಆದರೆ ಅವರು (ಈಸಾ) ಸ್ಪಷ್ಟ ಸಾಕ್ಷ್ಯಾಧಾರ-ಗಳೊಂದಿಗೆ ಅವರ ಬಳಿಗೆ ಬಂದಾಗ ಅವರು ಹೇಳಿದರು: "ಇದು ಸ್ಪಷ್ಟ ಮಾಟಗಾರಿಕೆಯಾಗಿದೆ."

وَإِذۡ قَالَ عِيسَى ٱبۡنُ مَرۡيَمَ يَٰبَنِيٓ إِسۡرَٰٓءِيلَ إِنِّي رَسُولُ ٱللَّهِ إِلَيۡكُم مُّصَدِّقٗا لِّمَا بَيۡنَ يَدَيَّ مِنَ ٱلتَّوۡرَىٰةِ وَمُبَشِّرَۢا بِرَسُولٖ يَأۡتِي مِنۢ بَعۡدِي ٱسۡمُهُۥٓ أَحۡمَدُۖ فَلَمَّا جَآءَهُم بِٱلۡبَيِّنَٰتِ قَالُواْ هَٰذَا سِحۡرٞ مُّبِينٞ ٦

---

7. ಅಲ್ಲಾಹನ ಮೇಲೆ ಸುಳ್ಳಾರೋಪಿಸುವವನಿಗಿಂತಲೂ ದೊಡ್ಡ

وَمَنۡ أَظۡلَمُ مِمَّنِ ٱفۡتَرَىٰ عَلَى ٱللَّهِ ٱلۡكَذِبَ

---

[1] ಅಹ್ಮದ್ ಪ್ರವಾದಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರವರ ಇನ್ನೊಂದು ಹೆಸರು.

ಅಕ್ರಮಿ ಯಾರು? ವಾಸ್ತವವಾಗಿ ಅವನನ್ನು ಇಸ್ಲಾಂ ಧರ್ಮಕ್ಕೆ ಆಮಂತ್ರಿಸಲಾಗುತ್ತಿದೆ. ಅಕ್ರಮಿಗಳಾದ ಜನರಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ.

وَهُوَ يُدۡعَىٰٓ إِلَى ٱلۡإِسۡلَٰمِۚ وَٱللَّهُ لَا يَهۡدِي ٱلۡقَوۡمَ ٱلظَّٰلِمِينَ ﴿٧﴾

---

8. ಅವರು ತಮ್ಮ ಬಾಯಿಯ ಮೂಲಕ ಅಲ್ಲಾಹನ ಬೆಳಕನ್ನು ನಂದಿಸಲು ಬಯಸುತ್ತಾರೆ. ಆದರೆ ಅಲ್ಲಾಹು ತನ್ನ ಬೆಳಕನ್ನು ಪೂರ್ಣಗೊಳಿಸಿ ಬಿಡುವನು. ಸತ್ಯನಿಷೇಧಿಗಳು ಎಷ್ಟು ದ್ವೇಷಿಸಿದರೂ ಸಹ.

يُرِيدُونَ لِيُطۡفِـُٔواْ نُورَ ٱللَّهِ بِأَفۡوَٰهِهِمۡ وَٱللَّهُ مُتِمُّ نُورِهِۦ وَلَوۡ كَرِهَ ٱلۡكَٰفِرُونَ ﴿٨﴾

---

9. ಅವನೇ ಸನ್ಮಾರ್ಗ ಮತ್ತು ಸತ್ಯಧರ್ಮದೊಂದಿಗೆ ತನ್ನ ಸಂದೇ-ಶವಾಹಕರನ್ನು ಕಳುಹಿಸಿದವನು. ಈ ಧರ್ಮವು ಇತರೆಲ್ಲಾ ಧರ್ಮಗಳ ಮೇಲೆ ಜಯಗಳಿಸುವಂತೆ ಮಾಡುವುದಕ್ಕಾಗಿ. ಬಹುದೇವಾರಾಧಕರು ಎಷ್ಟು ದ್ವೇಷಿಸಿದರೂ ಸಹ.

هُوَ ٱلَّذِيٓ أَرۡسَلَ رَسُولَهُۥ بِٱلۡهُدَىٰ وَدِينِ ٱلۡحَقِّ لِيُظۡهِرَهُۥ عَلَى ٱلدِّينِ كُلِّهِۦ وَلَوۡ كَرِهَ ٱلۡمُشۡرِكُونَ ﴿٩﴾

---

10. ಓ ಸತ್ಯವಿಶ್ವಾಸಿಗಳೇ! ಯಾತನಾಮಯ ಶಿಕ್ಷೆಯಿಂದ ನಿಮ್ಮನ್ನು ಪಾರು ಮಾಡುವ ಒಂದು ವ್ಯಾಪಾರದ ಬಗ್ಗೆ ನಾನು ನಿಮಗೆ ತಿಳಿಸಿಕೊಡಲೇ?

يَٰٓأَيُّهَا ٱلَّذِينَ ءَامَنُواْ هَلۡ أَدُلُّكُمۡ عَلَىٰ تِجَٰرَةٖ تُنجِيكُم مِّنۡ عَذَابٍ أَلِيمٖ ﴿١٠﴾

---

11. ನೀವು ಅಲ್ಲಾಹನಲ್ಲಿ ಮತ್ತು ಅವನ ಸಂದೇಶವಾಹಕ-ರಲ್ಲಿ ವಿಶ್ವಾಸವಿಡಿರಿ. ನಿಮ್ಮ ತನು-ಧನಗಳಿಂದ ಅಲ್ಲಾಹನ ಮಾರ್ಗದಲ್ಲಿ ಹೋರಾಡಿರಿ. ನೀವು ತಿಳಿದವರಾಗಿದ್ದರೆ ಅದೇ ನಿಮ್ಮ ಅತ್ಯುತ್ತಮವಾಗಿದೆ.

تُؤۡمِنُونَ بِٱللَّهِ وَرَسُولِهِۦ وَتُجَٰهِدُونَ فِي سَبِيلِ ٱللَّهِ بِأَمۡوَٰلِكُمۡ وَأَنفُسِكُمۡۚ ذَٰلِكُمۡ خَيۡرٞ لَّكُمۡ إِن كُنتُمۡ تَعۡلَمُونَ ﴿١١﴾

---

12. ಅಲ್ಲಾಹು ನಿಮ್ಮ ಪಾಪಗಳನ್ನು ಕ್ಷಮಿಸುವನು ಮತ್ತು ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳಿಗೆ ಮತ್ತು ಶಾಶ್ವತ ವಾಸದ ಸ್ವರ್ಗೋದ್ಯಾನಗಳಲ್ಲಿರುವ ಪರಿಶುದ್ಧ ವಸತಿಗಳಿಗೆ ನಿಮ್ಮನ್ನು ಪ್ರವೇಶ ಮಾಡಿಸುವನು. ಅದೇ ಅತಿದೊಡ್ಡ ವಿಜಯ.

يَغۡفِرۡ لَكُمۡ ذُنُوبَكُمۡ وَيُدۡخِلۡكُمۡ جَنَّٰتٖ تَجۡرِي مِن تَحۡتِهَا ٱلۡأَنۡهَٰرُ وَمَسَٰكِنَ طَيِّبَةٗ فِي جَنَّٰتِ عَدۡنٖۚ ذَٰلِكَ ٱلۡفَوۡزُ ٱلۡعَظِيمُ ﴿١٢﴾

---

13. ನೀವು ಇಷ್ಟಪಡುವ ಇನ್ನೊಂದು ಅನುಗ್ರಹವನ್ನು ಅವನು ನಿಮಗೆ ದಯಪಾಲಿಸುವನು. ಅದು ಅಲ್ಲಾಹನ ಸಹಾಯ ಮತ್ತು ಹತ್ತಿರದಲ್ಲೇ ಇರುವ ವಿಜಯವಾಗಿದೆ. ಸತ್ಯವಿಶ್ವಾಸಿಗಳಿಗೆ ಸುವಾರ್ತೆಯನ್ನು ತಿಳಿಸಿರಿ.

وَأُخۡرَىٰ تُحِبُّونَهَاۖ نَصۡرٞ مِّنَ ٱللَّهِ وَفَتۡحٞ قَرِيبٞۗ وَبَشِّرِ ٱلۡمُؤۡمِنِينَ ﴿١٣﴾

---

14. ಓ ಸತ್ಯವಿಶ್ವಾಸಿಗಳೇ! ನೀವು ಅಲ್ಲಾಹನ ಸಹಾಯಕರಾಗಿರಿ. ಮರ್ಯಮರ ಮಗ ಈಸಾ ಹವಾರಿಗಳೊಡನೆ ಕೇಳಿದಂತೆ: "ಅಲ್ಲಾಹನ ಮಾರ್ಗದಲ್ಲಿ ನನಗೆ ಸಹಾಯಕರಾಗಿ ಯಾರಿದ್ದೀರಿ?" ಹವಾರಿಗಳು ಉತ್ತರಿಸಿದರು: "ನಾವು ಅಲ್ಲಾಹನ ಮಾರ್ಗದಲ್ಲಿ ಸಹಾಯ ಮಾಡುತ್ತೇವೆ." ನಂತರ ಇಸ್ರಾಯೇಲ್ ಮಕ್ಕಳಲ್ಲಿ

يَٰٓأَيُّهَا ٱلَّذِينَ ءَامَنُواْ كُونُوٓاْ أَنصَارَ ٱللَّهِ كَمَا قَالَ عِيسَى ٱبۡنُ مَرۡيَمَ لِلۡحَوَارِيِّـۧنَ مَنۡ أَنصَارِيٓ إِلَى ٱللَّهِۖ قَالَ ٱلۡحَوَارِيُّونَ نَحۡنُ أَنصَارُ ٱللَّهِۖ فَـَٔامَنَت طَّآئِفَةٞ مِّنۢ بَنِيٓ إِسۡرَٰٓءِيلَ وَكَفَرَت

ಸೇರಿದ ಒಂದು ಗುಂಪು ವಿಶ್ವಾಸವಿಟ್ಟರೆ ಇನ್ನೊಂದು ಗುಂಪು ನಿಷೇಧಿಸಿತು. ಆಗ ನಾವು ಸತ್ಯವಿಶ್ವಾಸಿಗಳಿಗೆ ಅವರ ವೈರಿಗಳ ವಿರುದ್ಧ ಬೆಂಬಲವನ್ನು ನೀಡಿದೆವು. ತನ್ನಿಮಿತ್ತ ಅವರು ವಿಜಯಿಗಳಾದರು.

طَّآئِفَةٌۖ فَأَيَّدۡنَا ٱلَّذِينَ ءَامَنُواْ عَلَىٰ عَدُوِّهِمۡ فَأَصۡبَحُواْ ظَٰهِرِينَ ١٤

# 62. ಅಲ್-ಜುಮುಅ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಭೂಮ್ಯಾಕಾಶಗಳಲ್ಲಿರುವುದೆಲ್ಲವೂ ಅಲ್ಲಾಹನ ಪರಿಶುದ್ಧಿಯನ್ನು ಕೊಂಡಾಡುತ್ತಿವೆ. ಅವನು ಸಾಮ್ರಾಟನು, ಪರಮ ಪವಿತ್ರನು, ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

يُسَبِّحُ لِلَّهِ مَا فِي ٱلسَّمَٰوَٰتِ وَمَا فِي ٱلۡأَرۡضِ ٱلۡمَلِكِ ٱلۡقُدُّوسِ ٱلۡعَزِيزِ ٱلۡحَكِيمِ ١

2. ಅವನೇ ಅನಕ್ಷರಸ್ಥ ಜನರಿಗೆ ಅವರಿಂದಲೇ ಒಬ್ಬ ಸಂದೇಶವಾಹಕರನ್ನು ಕಳುಹಿಸಿದವನು. ಆ ಸಂದೇಶವಾಹಕರು ಅವರಿಗೆ ಅಲ್ಲಾಹನ ವಚನಗಳನ್ನು ಓದಿಕೊಡುತ್ತಾರೆ, ಅವರನ್ನು ಶುದ್ಧೀಕರಿಸುತ್ತಾರೆ ಮತ್ತು ಅವರಿಗೆ ಗ್ರಂಥ ಹಾಗೂ ವಿವೇಕವನ್ನು ಕಲಿಸಿಕೊಡುತ್ತಾರೆ. ಇದಕ್ಕಿಂತ ಮೊದಲು ಅವರು ಸ್ಪಷ್ಟ ದುರ್ಮಾರ್ಗದಲ್ಲಿದ್ದರು.

هُوَ ٱلَّذِي بَعَثَ فِي ٱلۡأُمِّيِّـۧنَ رَسُولٗا مِّنۡهُمۡ يَتۡلُواْ عَلَيۡهِمۡ ءَايَٰتِهِۦ وَيُزَكِّيهِمۡ وَيُعَلِّمُهُمُ ٱلۡكِتَٰبَ وَٱلۡحِكۡمَةَ وَإِن كَانُواْ مِن قَبۡلُ لَفِي ضَلَٰلٖ مُّبِينٖ ٢

3. ಅವರಲ್ಲಿ ಇನ್ನೂ ಅವರೊಡನೆ ಸೇರಿಕೊಳ್ಳದ ಜನರಿಗೂ ಕೂಡ (ಅವರು ಸಂದೇಶವಾಹಕರಾಗಿದ್ದಾರೆ). ಅಲ್ಲಾಹು ಪ್ರಬಲನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَءَاخَرِينَ مِنۡهُمۡ لَمَّا يَلۡحَقُواْ بِهِمۡۚ وَهُوَ ٱلۡعَزِيزُ ٱلۡحَكِيمُ ٣

4. ಅದು ಅಲ್ಲಾಹನ ಔದಾರ್ಯವಾಗಿದ್ದು ಅವನು ಇಚ್ಛಿಸುವವರಿಗೆ ಅದನ್ನು ದಯಪಾಲಿಸುತ್ತಾನೆ. ಅಲ್ಲಾಹು ಮಹಾ ಔದಾರ್ಯವಂತನಾಗಿದ್ದಾನೆ.

ذَٰلِكَ فَضۡلُ ٱللَّهِ يُؤۡتِيهِ مَن يَشَآءُۚ وَٱللَّهُ ذُو ٱلۡفَضۡلِ ٱلۡعَظِيمِ ٤

5. ತೌರಾತ್‌ನಲ್ಲಿರುವಂತೆ ನಡೆದುಕೊಳ್ಳಲು ಆದೇಶಿಸಲಾಗಿಯೂ ಸಹ ಅದರಂತೆ ನಡೆದುಕೊಳ್ಳದವರು ಯಾರೋ ಅವರ ಉದಾಹರಣೆಯು ಗ್ರಂಥಗಳನ್ನು ಹೊರುವ ಕತ್ತೆಯಂತೆ. ಅಲ್ಲಾಹನ ದೃಷ್ಟಾಂತಗಳನ್ನು ನಿಷೇಧಿಸುವ ಜನರ ಉದಾಹರಣೆಯು ಬಹಳ ನಿಕೃಷ್ಟವಾಗಿದೆ. ಅಕ್ರಮಿಗಳಾದ ಜನರಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ.

مَثَلُ ٱلَّذِينَ حُمِّلُواْ ٱلتَّوۡرَىٰةَ ثُمَّ لَمۡ يَحۡمِلُوهَا كَمَثَلِ ٱلۡحِمَارِ يَحۡمِلُ أَسۡفَارَۢاۚ بِئۡسَ مَثَلُ ٱلۡقَوۡمِ ٱلَّذِينَ كَذَّبُواْ بِـَٔايَٰتِ ٱللَّهِۚ وَٱللَّهُ لَا يَهۡدِي ٱلۡقَوۡمَ ٱلظَّٰلِمِينَ ٥

6. ಹೇಳಿರಿ: “ಓ ಯಹೂದಿಗಳೇ! ಇತರ ಜನರ ಹೊರತಾಗಿ ನೀವು ಮಾತ್ರ ಅಲ್ಲಾಹನ ಮಿತ್ರರು ಎಂಬ ನಿಮ್ಮ ದಾವೆಯು

قُلۡ يَٰٓأَيُّهَا ٱلَّذِينَ هَادُوٓاْ إِن زَعَمۡتُمۡ أَنَّكُمۡ أَوۡلِيَآءُ لِلَّهِ مِن دُونِ ٱلنَّاسِ فَتَمَنَّوُاْ ٱلۡمَوۡتَ إِن

ಸತ್ಯವಾಗಿದ್ದರೆ ನೀವು ಸಾವನ್ನು ಬಯಸಿರಿ. ನೀವು ಸತ್ಯವಂತರಾಗಿದ್ದರೆ."

كُنتُمْ صَٰدِقِينَ ٦

---

7. ಆದರೆ ಅವರ ಕೈಗಳು ಈಗಾಗಲೇ ಮಾಡಿಟ್ಟಿರುವ ದುಷ್ಕರ್ಮ-ಗಳಿಂದಾಗಿ ಅವರೆಂದೂ ಸಾವನ್ನು ಬಯಸುವುದಿಲ್ಲ. ಅಲ್ಲಾಹು ಅಕ್ರಮಿಗಳ ಬಗ್ಗೆ ಬಹಳ ಚೆನ್ನಾಗಿ ತಿಳಿದಿದ್ದಾನೆ.

وَلَا يَتَمَنَّوْنَهُۥٓ أَبَدًۢا بِمَا قَدَّمَتْ أَيْدِيهِمْ ۚ وَٱللَّهُ
عَلِيمٌۢ بِٱلظَّٰلِمِينَ ٧

---

8. ಹೇಳಿರಿ: "ಯಾವ ಸಾವನ್ನು ಹೆದರಿ ನೀವು ಓಡಿ ಹೋಗುತ್ತಿದ್ದೀರೋ ಅದು ನಿಮ್ಮನ್ನು ಖಂಡಿತ ಭೇಟಿಯಾಗಲಿದೆ. ನಂತರ ನಿಮ್ಮನ್ನು ದೃಶ್ಯ-ಅದೃಶ್ಯಗಳನ್ನು ತಿಳಿದ ಅಲ್ಲಾಹನ ಬಳಿಗೆ ಮರಳಿಸಲಾಗುವುದು. ಆಗ ನೀವು ಮಾಡುತ್ತಿದ್ದ ಕರ್ಮಗಳ ಬಗ್ಗೆ ಅವನು ನಿಮಗೆ ತಿಳಿಸಿಕೊಡುವನು."

قُلْ إِنَّ ٱلْمَوْتَ ٱلَّذِى تَفِرُّونَ مِنْهُ فَإِنَّهُۥ
مُلَٰقِيكُمْ ۖ ثُمَّ تُرَدُّونَ إِلَىٰ عَٰلِمِ ٱلْغَيْبِ
وَٱلشَّهَٰدَةِ فَيُنَبِّئُكُم بِمَا كُنتُمْ تَعْمَلُونَ ٨

---

9. ಓ ಸತ್ಯವಿಶ್ವಾಸಿಗಳೇ! ಶುಕ್ರವಾರ ನಮಾಝ್‌ಗಾಗಿ ಕರೆಯಲಾದರೆ (ಅಝಾನ್ ನೀಡಲಾದರೆ) ಅಲ್ಲಾಹನ ಸ್ಮರಣೆಯ ಕಡೆಗೆ ಧಾವಿಸಿರಿ ಮತ್ತು ವ್ಯಾಪಾರ-ವ್ಯವಹಾರಗಳನ್ನು ಬಿಟ್ಟುಬಿಡಿ. ಅದು ನಿಮಗೆ ಅತ್ಯುತ್ತಮವಾಗಿದೆ. ನೀವು ತಿಳಿದವರಾಗಿದ್ದರೆ.

يَٰٓأَيُّهَا ٱلَّذِينَ ءَامَنُوٓا۟ إِذَا نُودِىَ لِلصَّلَوٰةِ مِن
يَوْمِ ٱلْجُمُعَةِ فَٱسْعَوْا۟ إِلَىٰ ذِكْرِ ٱللَّهِ وَذَرُوا۟ ٱلْبَيْعَ ۚ
ذَٰلِكُمْ خَيْرٌ لَّكُمْ إِن كُنتُمْ تَعْلَمُونَ ٩

---

10. ನಮಾಝ್ ಮುಗಿದ ನಂತರ ನೀವು ಭೂಮಿಯಲ್ಲಿ ಚದುರಿ ಹೋಗಿರಿ ಮತ್ತು ಅಲ್ಲಾಹನ ಔದಾರ್ಯವನ್ನು ಹುಡುಕಿರಿ. ಅಲ್ಲಾಹನನ್ನು ಅತ್ಯಧಿಕವಾಗಿ ಸ್ಮರಿಸಿರಿ. ನೀವು ಯಶಸ್ವಿಯಾಗುವುದಕ್ಕಾಗಿ.

فَإِذَا قُضِيَتِ ٱلصَّلَوٰةُ فَٱنتَشِرُوا۟ فِى ٱلْأَرْضِ
وَٱبْتَغُوا۟ مِن فَضْلِ ٱللَّهِ وَٱذْكُرُوا۟ ٱللَّهَ كَثِيرًا
لَّعَلَّكُمْ تُفْلِحُونَ ١٠

---

11. ಅವರು ವ್ಯಾಪಾರದ ಸರಕು ಮಾರಾಟವಾಗುವುದನ್ನು ಕಂಡರೆ ಅಥವಾ ಮನೋರಂಜನೆಯನ್ನು ಕಂಡರೆ ಅದರ ಕಡೆಗೆ ಓಡುತ್ತಾರೆ ಮತ್ತು ನಿಮ್ಮನ್ನು ನಿಂತ ಸ್ಥಿತಿಯಲ್ಲೇ ಬಿಟ್ಟುಬಿಡುತ್ತಾರೆ.[1] ಹೇಳಿರಿ: "ಅಲ್ಲಾಹನ ಬಳಿ ಏನಿದೆಯೋ ಅದು ವ್ಯಾಪಾರ ಮತ್ತು ಮನೋರಂಜನೆಗಿಂತಲೂ ಶ್ರೇಷ್ಠವಾಗಿದೆ. ಅಲ್ಲಾಹು ಉಪಜೀವನ ನೀಡುವುದರಲ್ಲಿ ಅತ್ಯುತ್ತಮನಾಗಿದ್ದಾನೆ."

وَإِذَا رَأَوْا۟ تِجَٰرَةً أَوْ لَهْوًا ٱنفَضُّوٓا۟ إِلَيْهَا وَتَرَكُوكَ
قَآئِمًا ۚ قُلْ مَا عِندَ ٱللَّهِ خَيْرٌ مِّنَ ٱللَّهْوِ وَمِنَ
ٱلتِّجَٰرَةِ ۚ وَٱللَّهُ خَيْرُ ٱلرَّٰزِقِينَ ١١

---

[1] ಒಮ್ಮೆ ಒಂದು ಶುಕ್ರವಾರ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಖುತ್ಬಾ (ಪ್ರವಚನ) ನಿರ್ವಹಿಸುತ್ತಿದ್ದಾಗ ವ್ಯಾಪಾರ ತಂಡವು ಮದೀನ ಮಾರುಕಟ್ಟೆಗೆ ಆಗಮಿಸಿತು. ಸದ್ದುಗದ್ದಲ ಕೇಳಿ ಮಸೀದಿಯಲ್ಲಿದ್ದ ಜನರೆಲ್ಲರೂ ಸರಕು ಖರೀದಿಸಲು ಮಾರುಕಟ್ಟೆಗೆ ಓಡಿದರು. ಕೇವಲ 12 ಮಂದಿ ಮಾತ್ರ ಮಸೀದಿಯಲ್ಲಿ ಉಳಿದರು. ಇದರ ಬಗ್ಗೆ ಈ ವಚನವು ಅವತೀರ್ಣವಾಯಿತು.

# 63. ಅಲ್-ಮುನಾಫಿಕೂನ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಕಪಟವಿಶ್ವಾಸಿಗಳು ನಿಮ್ಮ ಬಳಿಗೆ ಬಂದರೆ, "ಖಂಡಿತವಾಗಿಯೂ ನೀವು ಅಲ್ಲಾಹನ ಸಂದೇಶವಾಹಕರಾಗಿದ್ದೀರಿ ಎಂದು ನಾವು ಸಾಕ್ಷಿ ನುಡಿಯುತ್ತೇವೆ" ಎಂದು ಹೇಳುತ್ತಾರೆ. ನೀವು ಅಲ್ಲಾಹನ ಸಂದೇಶವಾಹಕರು ಎಂದು ಅಲ್ಲಾಹನಿಗೆ ಬಹಳ ಚೆನ್ನಾಗಿ ತಿಳಿದಿದೆ. ನಿಶ್ಚಯವಾಗಿಯೂ ಕಪಟವಿಶ್ವಾಸಿಗಳು ಸುಳ್ಳು ಹೇಳುವವರಾಗಿದ್ದಾರೆ ಎಂದು ಅಲ್ಲಾಹು ಸಾಕ್ಷಿ ನುಡಿಯುತ್ತಾನೆ.

إِذَا جَآءَكَ ٱلۡمُنَٰفِقُونَ قَالُواْ نَشۡهَدُ إِنَّكَ لَرَسُولُ ٱللَّهِۗ وَٱللَّهُ يَعۡلَمُ إِنَّكَ لَرَسُولُهُۥ وَٱللَّهُ يَشۡهَدُ إِنَّ ٱلۡمُنَٰفِقِينَ لَكَٰذِبُونَ ١

2. ಅವರು ತಮ್ಮ ಆಣೆಗಳನ್ನು ಗುರಾಣಿಯಾಗಿ ಮಾಡಿಕೊಂಡಿದ್ದಾರೆ. ಇದರ ಮೂಲಕ ಅವರು ಅಲ್ಲಾಹನ ಮಾರ್ಗದಿಂದ ತಡೆಯುತ್ತಾರೆ. ಅವರು ಮಾಡುವ ಈ ಕೃತ್ಯವು ಬಹಳ ನಿಕೃಷ್ಟವಾಗಿದೆ.

ٱتَّخَذُوٓاْ أَيۡمَٰنَهُمۡ جُنَّةٗ فَصَدُّواْ عَن سَبِيلِ ٱللَّهِۚ إِنَّهُمۡ سَآءَ مَا كَانُواْ يَعۡمَلُونَ ٢

3. ಅದೇಕೆಂದರೆ, ಅವರು ಮೊದಲು ವಿಶ್ವಾಸವಿಟ್ಟು ನಂತರ ನಿಷೇಧಿಸಿದರು. ಆದ್ದರಿಂದ ಅವರ ಹೃದಯಗಳಿಗೆ ಮೊಹರು ಹಾಕಲಾಯಿತು. ಆದ್ದರಿಂದ ಅವರು (ಸತ್ಯವನ್ನು) ಅರ್ಥಮಾಡಿಕೊಳ್ಳುವುದಿಲ್ಲ.

ذَٰلِكَ بِأَنَّهُمۡ ءَامَنُواْ ثُمَّ كَفَرُواْ فَطُبِعَ عَلَىٰ قُلُوبِهِمۡ فَهُمۡ لَا يَفۡقَهُونَ ٣

4. ನೀವು ಅವರನ್ನು ನೋಡಿದರೆ ಅವರ ಅಂಗಸೌಷ್ಟವವು ನಿಮ್ಮನ್ನು ಅಚ್ಚರಿಗೊಳಿಸುತ್ತದೆ. ಅವರು ಮಾತನಾಡ ತೊಡಗಿದರೆ ನೀವು ಅವರ ಮಾತನ್ನು ಕೇಳುವಿರಿ. ಅವರು ಗೋಡೆಗೆ ಒರಗಿ ನಿಲ್ಲಿಸಲಾದ ಮರದ ದಿಮ್ಮಿಗಳಂತೆ. ಪ್ರತಿಯೊಂದು ಶಬ್ದವನ್ನೂ ಅವರಿಗೆ ವಿರುದ್ಧವಾದುದೆಂದು ಅವರು ಭಾವಿಸುತ್ತಾರೆ. ಅವರೇ ನಿಜವಾದ ವೈರಿಗಳು. ಅವರ ಬಗ್ಗೆ ಜಾಗರೂಕರಾಗಿರಿ. ಅಲ್ಲಾಹು ಅವರನ್ನು ನಾಶ ಮಾಡಲಿ. ಅವರನ್ನು ಹೇಗೆ ತಪ್ಪಿಸಿಬಿಡಲಾಗುತ್ತಿದೆ?

وَإِذَا رَأَيۡتَهُمۡ تُعۡجِبُكَ أَجۡسَامُهُمۡۖ وَإِن يَقُولُواْ تَسۡمَعۡ لِقَوۡلِهِمۡۖ كَأَنَّهُمۡ خُشُبٞ مُّسَنَّدَةٞۖ يَحۡسَبُونَ كُلَّ صَيۡحَةٍ عَلَيۡهِمۡۚ هُمُ ٱلۡعَدُوُّ فَٱحۡذَرۡهُمۡۚ قَٰتَلَهُمُ ٱللَّهُۖ أَنَّىٰ يُؤۡفَكُونَ ٤

5. "ಬನ್ನಿ, ಅಲ್ಲಾಹನ ಸಂದೇಶವಾಹಕರು ನಿಮಗೋಸ್ಕರ ಅಲ್ಲಾಹನಲ್ಲಿ ಕ್ಷಮೆಯಾಚನೆ ಮಾಡುತ್ತಾರೆ" ಎಂದು ಅವರೊಡನೆ ಹೇಳಲಾದರೆ ಅವರು ತಲೆಯನ್ನು ಅಲ್ಲಾಡಿಸುತ್ತಾರೆ. ಅವರು ಅಹಂಕಾರ ತೋರುತ್ತಾ ನುಣುಚಿಕೊಳ್ಳುವುದು ನಿಮಗೆ ಕಾಣಬಹುದು.

وَإِذَا قِيلَ لَهُمۡ تَعَالَوۡاْ يَسۡتَغۡفِرۡ لَكُمۡ رَسُولُ ٱللَّهِ لَوَّوۡاْ رُءُوسَهُمۡ وَرَأَيۡتَهُمۡ يَصُدُّونَ وَهُم مُّسۡتَكۡبِرُونَ ٥

6. ನೀವು ಅವರಿಗೋಸ್ಕರ ಕ್ಷಮೆಯಾಚನೆ ಮಾಡಿದರೂ ಮಾಡದಿದ್ದರೂ ಅವರ ಮಟ್ಟಿಗೆ ಅದು ಸಮಾನವಾಗಿದೆ. ಅಲ್ಲಾಹು ಎಂದಿಗೂ ಅವರನ್ನು ಕ್ಷಮಿಸುವುದಿಲ್ಲ. ನಿಶ್ಚಯವಾಗಿಯೂ ದುಷ್ಕರ್ಮಿಗಳಾದ ಜನರಿಗೆ ಅಲ್ಲಾಹು ಸನ್ಮಾರ್ಗವನ್ನು ತೋರಿಸುವುದಿಲ್ಲ.

سَوَآءٌ عَلَيۡهِمۡ أَسۡتَغۡفَرۡتَ لَهُمۡ أَمۡ لَمۡ تَسۡتَغۡفِرۡ
لَهُمۡ لَن يَغۡفِرَ ٱللَّهُ لَهُمۡۚ إِنَّ ٱللَّهَ لَا يَهۡدِي ٱلۡقَوۡمَ
ٱلۡفَٰسِقِينَ ٦

7. ಅವರು ಯಾರೆಂದರೆ, "ಅಲ್ಲಾಹನ ಸಂದೇಶವಾಹಕರ ಬಳಿಯಿರುವವರಿಗೆ ಅವರು ಅಲ್ಲಿಂದ ಚದುರಿಹೋಗುವ ತನಕ ಖರ್ಚು ಮಾಡಬೇಡಿ" ಎಂದು ಹೇಳುವವರು.[1] ಭೂಮ್ಯಾಕಾಶಗಳ ಬೊಕ್ಕಸಗಳು ಅಲ್ಲಾಹನಿಗೆ ಸೇರಿದ್ದು. ಆದರೆ ಕಪಟವಿಶ್ವಾಸಿಗಳು ಅದನ್ನು ಅರ್ಥಮಾಡಿಕೊಳ್ಳುವುದಿಲ್ಲ.

هُمُ ٱلَّذِينَ يَقُولُونَ لَا تُنفِقُواْ عَلَىٰ مَنۡ عِندَ
رَسُولِ ٱللَّهِ حَتَّىٰ يَنفَضُّواْۗ وَلِلَّهِ خَزَآئِنُ
ٱلسَّمَٰوَٰتِ وَٱلۡأَرۡضِ وَلَٰكِنَّ ٱلۡمُنَٰفِقِينَ لَا
يَفۡقَهُونَ ٧

8. ಅವರು ಹೇಳುತ್ತಾರೆ: "ನಾವು ಮದೀನಕ್ಕೆ ಮರಳಿದರೆ ಪ್ರತಿಷ್ಠೆಯುಳ್ಳವರು ದೀನರನ್ನು ಅಲ್ಲಿಂದ ಹೊರಗಟ್ಟುವರು."[2] ಪ್ರತಿಷ್ಠೆಯಿರುವುದು ಅಲ್ಲಾಹನಿಗೆ, ಅವನ ಸಂದೇಶವಾಹಕರಿಗೆ ಮತ್ತು ಸತ್ಯವಿಶ್ವಾಸಿಗಳಿಗೆ. ಆದರೆ ಕಪಟವಿಶ್ವಾಸಿಗಳು ಅದನ್ನು ತಿಳಿಯುವುದಿಲ್ಲ.

يَقُولُونَ لَئِن رَّجَعۡنَآ إِلَى ٱلۡمَدِينَةِ
لَيُخۡرِجَنَّ ٱلۡأَعَزُّ مِنۡهَا ٱلۡأَذَلَّۚ وَلِلَّهِ ٱلۡعِزَّةُ
وَلِرَسُولِهِۦ وَلِلۡمُؤۡمِنِينَ وَلَٰكِنَّ ٱلۡمُنَٰفِقِينَ
لَا يَعۡلَمُونَ ٨

9. ಓ ಸತ್ಯವಿಶ್ವಾಸಿಗಳೇ! ನಿಮ್ಮ ಆಸ್ತಿ ಮತ್ತು ಮಕ್ಕಳು ಅಲ್ಲಾಹನ ಸ್ಮರಣೆಯನ್ನು ನಿರ್ಲಕ್ಷಿಸುವಂತೆ ನಿಮ್ಮನ್ನು ಪ್ರೇರೇಪಿಸದಿರಲಿ. ಯಾರು ಹಾಗೆ ಮಾಡುತ್ತಾರೋ ಅವರೇ ನಷ್ಟ ಹೊಂದಿದವರು.

يَٰٓأَيُّهَا ٱلَّذِينَ ءَامَنُواْ لَا تُلۡهِكُمۡ أَمۡوَٰلُكُمۡ
وَلَآ أَوۡلَٰدُكُمۡ عَن ذِكۡرِ ٱللَّهِۚ وَمَن يَفۡعَلۡ ذَٰلِكَ
فَأُوْلَٰٓئِكَ هُمُ ٱلۡخَٰسِرُونَ ٩

10. ನಿಮ್ಮಲ್ಲೊಬ್ಬರಿಗೆ ಮರಣವು ಆಸನ್ನವಾಗಿ, "ನನ್ನ ಪರಿಪಾಲಕನೇ! ನನಗೆ ಸ್ವಲ್ಪ ಕಾಲಾವಕಾಶವನ್ನು ಕೊಟ್ಟರೆ ನಾನು ದಾನಧರ್ಮ ಮಾಡುತ್ತೇನೆ ಮತ್ತು ನೀತಿವಂತರಲ್ಲಿ ಸೇರಿಕೊಳ್ಳುತ್ತೇನೆ" ಎಂದು ಹೇಳುವಂತಾಗುವುದಕ್ಕೆ ಮೊದಲು ನಾವು ನಿಮಗೆ ಒದಗಿಸಿದ ಸಂಪತ್ತಿನಿಂದ (ಅಲ್ಲಾಹನ ಮಾರ್ಗದಲ್ಲಿ) ಖರ್ಚು ಮಾಡಿರಿ.

وَأَنفِقُواْ مِن مَّا رَزَقۡنَٰكُم مِّن قَبۡلِ أَن
يَأۡتِيَ أَحَدَكُمُ ٱلۡمَوۡتُ فَيَقُولَ رَبِّ لَوۡلَآ
أَخَّرۡتَنِيٓ إِلَىٰٓ أَجَلٖ قَرِيبٖ فَأَصَّدَّقَ وَأَكُن
مِّنَ ٱلصَّٰلِحِينَ ١٠

11. ಒಬ್ಬ ವ್ಯಕ್ತಿಯ ನಿಶ್ಚಿತ ಅವಧಿಯು ಬಂದು ಬಿಟ್ಟರೆ, ನಂತರ ಅಲ್ಲಾಹು ಅವನಿಗೆ ಕಾಲಾವಕಾಶ ನೀಡುವುದೇ ಇಲ್ಲ. ಅಲ್ಲಾಹು ನೀವು ಮಾಡುತ್ತಿರುವ ಕರ್ಮಗಳ ಬಗ್ಗೆ ಸೂಕ್ಷ್ಮಜ್ಞಾನವುಳ್ಳವನಾಗಿದ್ದಾನೆ.

وَلَن يُؤَخِّرَ ٱللَّهُ نَفۡسًا إِذَا جَآءَ أَجَلُهَاۚ وَٱللَّهُ
خَبِيرُۢ بِمَا تَعۡمَلُونَ ١١

[1] ಒಮ್ಮೆ ಒಂದು ಯುದ್ಧದಿಂದ ಹಿಂದಿರುಗಿ ಬರುವಾಗ ಒಬ್ಬ ಮುಹಾಜಿರ್ ಮತ್ತು ಅನ್ಸಾರನ ನಡುವೆ ಜಗಳವಾಯಿತು. ಇಬ್ಬರೂ ತಮ್ಮ ತಮ್ಮ ಜನರನ್ನು ಸಹಾಯಕ್ಕೆ ಕರೆದರು. ಆಗ ಕಪಟವಿಶ್ವಾಸಿಗಳ ಮುಖಂಡ ಅಬ್ದುಲ್ಲಾ ಬಿನ್ ಉಬೈ ಅನ್ಸಾರರನ್ನು ಕರೆದು, "ನೋಡಿ, ನೀವು ಅವರಿಗೆ ಸಹಾಯ ಮಾಡಿದ್ದೀರಿ. ಈಗ ಅದರ ಫಲಿತಾಂಶವೇನಾಯಿತೆಂದು ನೋಡಿ. ಅವರು ನಿಮ್ಮ ವಿರುದ್ಧ ಅವರ ಜನರನ್ನು ಕರೆಯುತ್ತಿದ್ದಾರೆ." ನಂತರ ಆತ ಹೇಳಿದ: "ಇದಕ್ಕಿರುವ ಮದ್ದೇನೆಂದರೆ ಅವರಿಗೆ ಖರ್ಚು ಮಾಡುವುದನ್ನು ನೀವು ನಿಲ್ಲಿಸಬೇಕು. ಆಗ ಅವರ ಸ್ವಯಂ ಸರಿದಾರಿಗೆ ಬರುತ್ತಾರೆ."

[2] ಇದು ಕಪಟವಿಶ್ವಾಸಿಗಳ ಮುಖಂಡ ಅಬ್ದುಲ್ಲಾ ಬಿನ್ ಉಬೈ ಹೇಳಿದ ಮಾತು. ಅವನ ಪ್ರಕಾರ ಅವನು ಮತ್ತು ಅವನ ಅನುಯಾಯಿಗಳು ಪ್ರತಿಷ್ಠಿತರು. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮತ್ತು ಅವರ ಅನುಯಾಯಿಗಳು ದೀನರು.

# 64. ಅತ್ತಗಾಬುನ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ಭೂಮ್ಯಾಕಾಶಗಳಲ್ಲಿರುವುದೆಲ್ಲವೂ ಅಲ್ಲಾಹನ ಪರಿಶುದ್ಧಿಯನ್ನು ಕೊಂಡಾಡುತ್ತಿವೆ. ಸಾರ್ವಭೌಮತ್ವವು ಅವನಿಗೆ ಸೇರಿದ್ದು ಮತ್ತು ಸರ್ವಸ್ತುತಿಯು ಅವನಿಗೆ ಮೀಸಲು. ಅವನು ಎಲ್ಲ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ. | يُسَبِّحُ لِلَّهِ مَا فِي ٱلسَّمَٰوَٰتِ وَمَا فِي ٱلۡأَرۡضِۖ لَهُ ٱلۡمُلۡكُ وَلَهُ ٱلۡحَمۡدُۖ وَهُوَ عَلَىٰ كُلِّ شَيۡءٖ قَدِيرٌ ١ |
| 2. | ಅವನೇ ನಿಮ್ಮನ್ನು ಸೃಷ್ಟಿಸಿದವನು. ನಿಮ್ಮಲ್ಲಿ ಸತ್ಯನಿಷೇಧಿಗಳಿದ್ದಾರೆ ಮತ್ತು ಸತ್ಯವಿಶ್ವಾಸಿಗಳೂ ಇದ್ದಾರೆ. ಅಲ್ಲಾಹು ನೀವು ಮಾಡುತ್ತಿರುವ ಕರ್ಮಗಳನ್ನು ನೋಡುತ್ತಿದ್ದಾನೆ. | هُوَ ٱلَّذِي خَلَقَكُمۡ فَمِنكُمۡ كَافِرٞ وَمِنكُم مُّؤۡمِنٞۚ وَٱللَّهُ بِمَا تَعۡمَلُونَ بَصِيرٌ ٢ |
| 3. | ಅವನು ಭೂಮ್ಯಾಕಾಶಗಳನ್ನು ಸತ್ಯದೊಂದಿಗೆ ಸೃಷ್ಟಿಸಿದ್ದಾನೆ. ಅವನು ನಿಮಗೆ ರೂಪವನ್ನು ನೀಡಿದ್ದಾನೆ ಮತ್ತು ನಿಮ್ಮ ರೂಪಗಳನ್ನು ಅತ್ಯುತ್ತಮಗೊಳಿಸಿದ್ದಾನೆ. ಗಮ್ಯಸ್ಥಾನವು ಅವನ ಬಳಿಯಲ್ಲೇ ಆಗಿದೆ. | خَلَقَ ٱلسَّمَٰوَٰتِ وَٱلۡأَرۡضَ بِٱلۡحَقِّ وَصَوَّرَكُمۡ فَأَحۡسَنَ صُوَرَكُمۡۖ وَإِلَيۡهِ ٱلۡمَصِيرُ ٣ |
| 4. | ಭೂಮ್ಯಾಕಾಶಗಳಲ್ಲಿರುವುದೆಲ್ಲವನ್ನೂ ಅವನು ತಿಳಿದಿದ್ದಾನೆ. ನೀವು ಮುಚ್ಚಿಡುವುದನ್ನು ಮತ್ತು ಬಹಿರಂಗಪಡಿಸುವುದನ್ನು ಅವನು ತಿಳಿಯುತ್ತಾನೆ. ಅಲ್ಲಾಹು ಎದೆಗಳ ಒಳಗಿರುವುದನ್ನು ತಿಳಿಯುತ್ತಾನೆ. | يَعۡلَمُ مَا فِي ٱلسَّمَٰوَٰتِ وَٱلۡأَرۡضِ وَيَعۡلَمُ مَا تُسِرُّونَ وَمَا تُعۡلِنُونَۚ وَٱللَّهُ عَلِيمُۢ بِذَاتِ ٱلصُّدُورِ ٤ |
| 5. | ಇದಕ್ಕಿಂತ ಮೊದಲು ಸತ್ಯವನ್ನು ನಿಷೇಧಿಸಿದವರ ಸಮಾಚಾರವು ನಿಮಗೆ ತಲುಪಿಲ್ಲವೇ? ಅವರು ಅವರ ದುಷ್ಕರ್ಮಗಳ ರುಚಿಯನ್ನು ನೋಡಿದರು. ಅವರಿಗೆ (ಪರಲೋಕದಲ್ಲಿ) ಯಾತನಾಮಯ ಶಿಕ್ಷೆಯಿದೆ. | أَلَمۡ يَأۡتِكُمۡ نَبَؤُاْ ٱلَّذِينَ كَفَرُواْ مِن قَبۡلُ فَذَاقُواْ وَبَالَ أَمۡرِهِمۡ وَلَهُمۡ عَذَابٌ أَلِيمٞ ٥ |
| 6. | ಅದೇಕೆಂದರೆ, ಅವರ ಬಳಿಗೆ ಸಂದೇಶವಾಹಕರು ಸ್ಪಷ್ಟ ಸಾಕ್ಷ್ಯಾಧಾರಗಳೊಂದಿಗೆ ಬರುತ್ತಿದ್ದರು. ಆದರೆ ಅವರು ಕೇಳಿದರು: “ಒಬ್ಬ ಮನುಷ್ಯ ನಮಗೆ ದಾರಿ ತೋರಿಸುವುದೇ?” ಅವರು ನಿಷೇಧಿಸಿದರು ಮತ್ತು ಮುಖ ತಿರುಗಿಸಿ ನಡೆದರು. ಅಲ್ಲಾಹು ಅವರ ಬಗ್ಗೆ ನಿರಪೇಕ್ಷನಾದನು. ಅಲ್ಲಾಹು ನಿರಪೇಕ್ಷನು ಮತ್ತು ಸ್ತುತ್ಯರ್ಹನಾಗಿದ್ದಾನೆ. | ذَٰلِكَ بِأَنَّهُۥ كَانَت تَّأۡتِيهِمۡ رُسُلُهُم بِٱلۡبَيِّنَٰتِ فَقَالُوٓاْ أَبَشَرٞ يَهۡدُونَنَا فَكَفَرُواْ وَتَوَلَّواْۖ وَّٱسۡتَغۡنَى ٱللَّهُۚ وَٱللَّهُ غَنِيٌّ حَمِيدٞ ٦ |
| 7. | ತಮ್ಮನ್ನು ಪುನಃ ಜೀವ ನೀಡಿ ಎಬ್ಬಿಸಲಾಗುವುದಿಲ್ಲ ಎಂದು ಸತ್ಯನಿಷೇಧಿಗಳು ವಾದಿಸಿದರು. ಹೇಳಿರಿ: “ಹೌದು! ನನ್ನ | زَعَمَ ٱلَّذِينَ كَفَرُوٓاْ أَن لَّن يُبۡعَثُواْۚ قُلۡ بَلَىٰ |

| | | |
|---|---|---|
| | ಪರಿಪಾಲಕನ ಮೇಲಾಣೆ! ಖಂಡಿತವಾಗಿಯೂ ನಿಮಗೆ ಜೀವ ನೀಡಿ ಎಬ್ಬಿಸಲಾಗುವುದು. ನಂತರ ನೀವು ಮಾಡಿದ ಕರ್ಮಗಳ ಬಗ್ಗೆ ನಿಮಗೆ ಖಂಡಿತ ತಿಳಿಸಲಾಗುವುದು. ಅದು ಅಲ್ಲಾಹನಿಗೆ ಬಹಳ ಸುಲಭವಾಗಿದೆ.” | وَرَبِّي لَتُبۡعَثُنَّ ثُمَّ لَتُنَبَّؤُنَّ بِمَا عَمِلۡتُمۡۚ وَذَٰلِكَ عَلَى ٱللَّهِ يَسِيرٞ ٧ |
| 8. | ಆದ್ದರಿಂದ ನೀವು ಅಲ್ಲಾಹನಲ್ಲಿ, ಅವನ ಸಂದೇಶವಾಹಕರಲ್ಲಿ ಮತ್ತು ನಾವು ಅವತೀರ್ಣಗೊಳಿಸಿದ ಬೆಳಕಿನಲ್ಲಿ (ಕುರ್‌ಆನಿನಲ್ಲಿ) ವಿಶ್ವಾಸವಿಡಿ. ಅಲ್ಲಾಹು ನೀವು ಮಾಡುತ್ತಿರುವ ಕರ್ಮಗಳ ಬಗ್ಗೆ ಸೂಕ್ಷ್ಮಜ್ಞಾನವುಳ್ಳವನಾಗಿದ್ದಾನೆ. | فَـَٔامِنُواْ بِٱللَّهِ وَرَسُولِهِۦ وَٱلنُّورِ ٱلَّذِيٓ أَنزَلۡنَاۚ وَٱللَّهُ بِمَا تَعۡمَلُونَ خَبِيرٞ ٨ |
| 9. | ಒಟ್ಟುಗೂಡಿಸುವ ಆ ದಿನಕ್ಕಾಗಿ (ಪುನರುತ್ಥಾನ ದಿನಕ್ಕಾಗಿ) ಅವನು ನಿಮ್ಮೆಲ್ಲರನ್ನು ಒಟ್ಟುಗೂಡಿಸುವ ದಿನ! ಅದು ಸೋಲು-ಗೆಲುವಿನ ದಿನವಾಗಿದೆ. ಯಾರು ಅಲ್ಲಾಹನಲ್ಲಿ ವಿಶ್ವಾಸವಿಡುತ್ತಾನೋ ಮತ್ತು ಸತ್ಕರ್ಮವೆಸಗುತ್ತಾನೋ ಅವನ ಪಾಪಗಳನ್ನು ಅಲ್ಲಾಹು ಅಳಿಸುತ್ತಾನೆ ಮತ್ತು ಅವನನ್ನು ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳಿಗೆ ಪ್ರವೇಶ ಮಾಡಿಸುತ್ತಾನೆ. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುತ್ತಾರೆ. ಅದೇ ಮಹಾ ವಿಜಯ. | يَوۡمَ يَجۡمَعُكُمۡ لِيَوۡمِ ٱلۡجَمۡعِۖ ذَٰلِكَ يَوۡمُ ٱلتَّغَابُنِۗ وَمَن يُؤۡمِنۢ بِٱللَّهِ وَيَعۡمَلۡ صَٰلِحٗا يُكَفِّرۡ عَنۡهُ سَيِّـَٔاتِهِۦ وَيُدۡخِلۡهُ جَنَّٰتٖ تَجۡرِي مِن تَحۡتِهَا ٱلۡأَنۡهَٰرُ خَٰلِدِينَ فِيهَآ أَبَدٗاۚ ذَٰلِكَ ٱلۡفَوۡزُ ٱلۡعَظِيمُ ٩ |
| 10. | ಸತ್ಯವನ್ನು ನಿಷೇಧಿಸಿದವರು ಮತ್ತು ನಮ್ಮ ವಚನಗಳನ್ನು ನಿಷೇಧಿಸಿದವರು ಯಾರೋ ಅವರೇ ನರಕವಾಸಿಗಳು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಆ ಗಮ್ಯಸ್ಥಾನವು ಬಹಳ ನಿಕೃಷ್ಟವಾಗಿದೆ. | وَٱلَّذِينَ كَفَرُواْ وَكَذَّبُواْ بِـَٔايَٰتِنَآ أُوْلَٰٓئِكَ أَصۡحَٰبُ ٱلنَّارِ خَٰلِدِينَ فِيهَاۖ وَبِئۡسَ ٱلۡمَصِيرُ ١٠ |
| 11. | ಯಾವುದೇ ವಿಪತ್ತು ಅಲ್ಲಾಹನ ಅಪ್ಪಣೆಯಿಂದಲ್ಲದೆ ಸಂಭವಿಸುವುದಿಲ್ಲ. ಯಾರು ಅಲ್ಲಾಹನಲ್ಲಿ ವಿಶ್ವಾಸವಿಡು-ತ್ತಾನೋ ಅವನ ಹೃದಯವನ್ನು ಅಲ್ಲಾಹು ಸನ್ಮಾರ್ಗದಲ್ಲಿ ಮುನ್ನಡೆಸುತ್ತಾನೆ. ಅಲ್ಲಾಹು ಎಲ್ಲಾ ವಿಷಯಗಳ ಬಗ್ಗೆ ತಿಳಿದವನಾಗಿದ್ದಾನೆ. | مَآ أَصَابَ مِن مُّصِيبَةٍ إِلَّا بِإِذۡنِ ٱللَّهِۗ وَمَن يُؤۡمِنۢ بِٱللَّهِ يَهۡدِ قَلۡبَهُۥۚ وَٱللَّهُ بِكُلِّ شَيۡءٍ عَلِيمٞ ١١ |
| 12. | ನೀವು ಅಲ್ಲಾಹು ಅವನ ಮತ್ತು ಸಂದೇಶವಾಹಕರ ಆಜ್ಞಾಪಾಲನೆ ಮಾಡಿರಿ. ನೀವೇನಾದರೂ ವಿಮುಖರಾಗುವುದಾದರೆ, ನಮ್ಮ ಸಂದೇಶವಾಹಕರ ಕರ್ತವ್ಯವು ಸಂದೇಶವನ್ನು ಸ್ಪಷ್ಟವಾಗಿ ತಲುಪಿಸುವುದು ಮಾತ್ರವಾಗಿದೆ. | وَأَطِيعُواْ ٱللَّهَ وَأَطِيعُواْ ٱلرَّسُولَۚ فَإِن تَوَلَّيۡتُمۡ فَإِنَّمَا عَلَىٰ رَسُولِنَا ٱلۡبَلَٰغُ ٱلۡمُبِينُ ١٢ |
| 13. | ಅಲ್ಲಾಹು. ಅವನ ಹೊರತು ಆರಾಧನೆಗೆ ಅರ್ಹರಾದ ಅನ್ಯ ದೇವರಿಲ್ಲ. ಸತ್ಯವಿಶ್ವಾಸಿಗಳು ಅಲ್ಲಾಹನಲ್ಲಿಯೇ ಭರವಸೆಯಿಡಲಿ. | ٱللَّهُ لَآ إِلَٰهَ إِلَّا هُوَۚ وَعَلَى ٱللَّهِ فَلۡيَتَوَكَّلِ ٱلۡمُؤۡمِنُونَ ١٣ |

14. ಓ ಸತ್ಯವಿಶ್ವಾಸಿಗಳೇ! ನಿಶ್ಚಯವಾಗಿಯೂ ನಿಮ್ಮ ಪತ್ನಿಯರಲ್ಲಿ ಮತ್ತು ನಿಮ್ಮ ಮಕ್ಕಳಲ್ಲಿ ನಿಮಗೆ ವೈರಿಗಳಿದ್ದಾರೆ. ಆದ್ದರಿಂದ ಅವರ ಬಗ್ಗೆ ಜಾಗರೂಕರಾಗಿರಿ. ನೀವು ಮನ್ನಿಸುವುದಾದರೆ, (ಅವರ ತಪ್ಪುಗಳನ್ನು) ನಿರ್ಲಕ್ಷಿಸುವುದಾದರೆ ಮತ್ತು ಅವರಿಗೆ ಕ್ಷಮಿಸುವುದಾದರೆ ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.[1]

يَٰٓأَيُّهَا ٱلَّذِينَ ءَامَنُوٓاْ إِنَّ مِنۡ أَزۡوَٰجِكُمۡ وَأَوۡلَٰدِكُمۡ عَدُوّٗا لَّكُمۡ فَٱحۡذَرُوهُمۡۚ وَإِن تَعۡفُواْ وَتَصۡفَحُواْ وَتَغۡفِرُواْ فَإِنَّ ٱللَّهَ غَفُورٞ رَّحِيمٌ ١٤

15. ನಿಮ್ಮ ಆಸ್ತಿ ಮತ್ತು ಮಕ್ಕಳು ಒಂದು ಪರೀಕ್ಷೆಯಾಗಿದೆ. ಅಲ್ಲಾಹನ ಬಳಿ ಮಹಾ ಪ್ರತಿಫಲವಿದೆ.

إِنَّمَآ أَمۡوَٰلُكُمۡ وَأَوۡلَٰدُكُمۡ فِتۡنَةٞۚ وَٱللَّهُ عِندَهُۥٓ أَجۡرٌ عَظِيمٞ ١٥

16. ಆದ್ದರಿಂದ ನಿಮಗೆ ಸಾಧ್ಯವಾಗುವಷ್ಟರ ಮಟ್ಟಿಗೆ ನೀವು ಅಲ್ಲಾಹನನ್ನು ಭಯಪಡಿರಿ. ಕಿವಿಗೊಟ್ಟು ಕೇಳಿರಿ ಮತ್ತು ಅನುಸರಿಸಿರಿ. ನಿಮಗೆ ಒಳಿತಾಗಿರುವ ವಿಧದಲ್ಲಿ ಅಲ್ಲಾಹನ ಮಾರ್ಗದಲ್ಲಿ ಖರ್ಚು ಮಾಡಿರಿ. ಯಾರನ್ನು ಅವರ ಮನಸ್ಸಿನ ಆಸೆಬುರುಕತನದಿಂದ ಕಾಪಾಡಲಾಗಿದೆಯೋ ಅವರು ಯಶಸ್ವಿಯಾದವರು.

فَٱتَّقُواْ ٱللَّهَ مَا ٱسۡتَطَعۡتُمۡ وَٱسۡمَعُواْ وَأَطِيعُواْ وَأَنفِقُواْ خَيۡرٗا لِّأَنفُسِكُمۡۗ وَمَن يُوقَ شُحَّ نَفۡسِهِۦ فَأُوْلَٰٓئِكَ هُمُ ٱلۡمُفۡلِحُونَ ١٦

17. ನೀವು ಅಲ್ಲಾಹನಿಗೆ ಉತ್ತಮ ಸಾಲವನ್ನು ನೀಡುವುದಾದರೆ ಅವನು ಅದನ್ನು ನಿಮಗೆ ಹಲವು ಪಟ್ಟು ದ್ವಿಗುಣಗೊಳಿಸುವನು ಮತ್ತು ನಿಮ್ಮನ್ನು ಕ್ಷಮಿಸುವನು. ಅಲ್ಲಾಹು ಕೃತಜ್ಞನು ಮತ್ತು ಸಹಿಷ್ಣುತೆಯುಳ್ಳವನಾಗಿದ್ದಾನೆ.

إِن تُقۡرِضُواْ ٱللَّهَ قَرۡضًا حَسَنٗا يُضَٰعِفۡهُ لَكُمۡ وَيَغۡفِرۡ لَكُمۡۚ وَٱللَّهُ شَكُورٌ حَلِيمٌ ١٧

18. ಅವನು ದೃಶ್ಯ-ಅದೃಶ್ಯಗಳನ್ನು ತಿಳಿದವನಾಗಿದ್ದಾನೆ ಮತ್ತು ಪ್ರಬಲನು ಹಾಗೂ ವಿವೇಕಪೂರ್ಣನಾಗಿದ್ದಾನೆ.

عَٰلِمُ ٱلۡغَيۡبِ وَٱلشَّهَٰدَةِ ٱلۡعَزِيزُ ٱلۡحَكِيمُ ١٨

---

[1] [] ಮಕ್ಕಾದಲ್ಲಿ ಇಸ್ಲಾಂ ಸ್ವೀಕರಿಸಿದವರು ಮದೀನಕ್ಕೆ ಹಿಜ್ರ (ವಲಸೆ) ಮಾಡಬೇಕೆಂಬ ಆಜ್ಞೆಯು ಪ್ರಬಲವಾಗಿದ್ದ ಕಾಲದಲ್ಲಿ ಮಕ್ಕಾದಲ್ಲಿ ಕೆಲವರು ಇಸ್ಲಾಂ ಸ್ವೀಕರಿಸಿದರು. ಆದರೆ ಅವರ ಪತ್ನಿಯರು ಮತ್ತು ಮಕ್ಕಳು ಅವರನ್ನು ಮದೀನಕ್ಕೆ ವಲಸೆ ಹೋಗದಂತೆ ತಡೆದರು. ನಂತರ ಕೆಲವು ವರ್ಷಗಳ ಬಳಿಕ ಅವರು ಮದೀನಕ್ಕೆ ಬಂದಾಗ ಅಲ್ಲಿ ಇತರ ಮುಸಲ್ಮಾನರು ಬಹಳಷ್ಟು ಧಾರ್ಮಿಕ ವಿಚಾರಗಳನ್ನು ಕಲಿತುಕೊಂಡು ಅಪಾರ ಪುಣ್ಯ ಸಂಪಾದಿಸಿದ್ದನ್ನು ಕಂಡು ಇವರಿಗೆ ಮರುಕವಾಯಿತು. ತಮ್ಮನ್ನು ಮದೀನಕ್ಕೆ ಹಿಜ್ರ ಮಾಡದಂತೆ ತಡೆದ ಪತ್ನಿಯರು ಮತ್ತು ಮಕ್ಕಳನ್ನು ಶಿಕ್ಷಿಸಲು ಅವರು ಮುಂದಾದರು. ಆಗ ಅಲ್ಲಾಹು ಈ ವಚನವನ್ನು ಅವತೀರ್ಣಗೊಳಿಸಿದನು. ಅವರು ಮಾಡಿದ ತಪ್ಪನ್ನು ಕ್ಷಮಿಸಲು ಮತ್ತು ನಿರ್ಲಕ್ಷಿಸಲು ಅಲ್ಲಾಹು ಆಜ್ಞಾಪಿಸಿದನು.

# 65. ಅತ್ತಲಾಕ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಓ ಪ್ರವಾದಿಯವರೇ! (ನಿಮ್ಮ ಅನುಯಾಯಿಗಳೊಡನೆ ಹೇಳಿರಿ): “ನೀವು ನಿಮ್ಮ ಪತ್ನಿಯರಿಗೆ ವಿಚ್ಛೇದನ (ತಲಾಕ್) ನೀಡುವುದಾದರೆ, ಅವರ ಇದ್ದತ್‌ನ (ದೀಕ್ಷಾಕಾಲದ) ಆರಂಭವನ್ನು ಲೆಕ್ಕಹಾಕಿ ವಿಚ್ಛೇದಿಸಿರಿ[1] ಮತ್ತು ಇದ್ದತ್‌ನ ಲೆಕ್ಕವನ್ನು ಇಟ್ಟುಕೊಳ್ಳಿ, ನಿಮ್ಮ ಪರಿಪಾಲಕನಾದ ಅಲ್ಲಾಹನನ್ನು ಭಯಪಡಿರಿ. ಅವರನ್ನು ಅವರ ಮನೆಗಳಿಂದ ಹೊರಹಾಕಬೇಡಿ ಮತ್ತು ಅವರು ಕೂಡ (ಸ್ವತಃ) ಮನೆಯಿಂದ ಹೊರಹೋಗದಿರಲಿ. ಅವರು ಸ್ಪಷ್ಟ ನೀಚಕೃತ್ಯವನ್ನು ಮಾಡಿದರೆ ಹೊರತು. ಇವು ಅಲ್ಲಾಹನ ಎಲ್ಲೆಗಳಾಗಿವೆ. ಯಾರು ಅಲ್ಲಾಹನ ಎಲ್ಲೆಗಳನ್ನು ಮೀರುತ್ತಾನೋ ಅವನು ಸ್ವಯಂ ಅವನ ಮೇಲೆಯೇ ಅಕ್ರಮವೆಸಗಿದ್ದಾನೆ. ಅಲ್ಲಾಹು ಇದರ ನಂತರ ಏನಾದರೂ ಹೊಸದನ್ನು ತರುವನೋ ಎಂದು ನಿಮಗೆ ತಿಳಿದಿಲ್ಲ.

يَـٰٓأَيُّهَا ٱلنَّبِيُّ إِذَا طَلَّقۡتُمُ ٱلنِّسَآءَ فَطَلِّقُوهُنَّ
لِعِدَّتِهِنَّ وَأَحۡصُواْ ٱلۡعِدَّةَۖ وَٱتَّقُواْ ٱللَّهَ رَبَّكُمۡۖ
لَا تُخۡرِجُوهُنَّ مِنۢ بُيُوتِهِنَّ وَلَا يَخۡرُجۡنَ إِلَّآ أَن
يَأۡتِينَ بِفَٰحِشَةٖ مُّبَيِّنَةٖۚ وَتِلۡكَ حُدُودُ ٱللَّهِۚ وَمَن
يَتَعَدَّ حُدُودَ ٱللَّهِ فَقَدۡ ظَلَمَ نَفۡسَهُۥۚ لَا تَدۡرِي
لَعَلَّ ٱللَّهَ يُحۡدِثُ بَعۡدَ ذَٰلِكَ أَمۡرٗا ١

2. ಅವರು (ವಿಚ್ಛೇದಿತೆಯರು) ತಮ್ಮ ಇದ್ದತ್‌ನ ಅವಧಿಯನ್ನು ಪೂರ್ತಿ ಮಾಡುವ ಹಂತಕ್ಕೆ ತಲುಪಿದರೆ ಸ್ವೀಕಾರಾರ್ಹ ರೀತಿಯಲ್ಲಿ ಅವರನ್ನು ನಿಮ್ಮ ಬಳಿ (ಪತ್ನಿಯಾಗಿ) ಇರಿಸಿಕೊಳ್ಳಿರಿ ಅಥವಾ ಸ್ವೀಕಾರಾರ್ಹ ರೀತಿಯಲ್ಲಿ ಬಿಡುಗಡೆ ಮಾಡಿರಿ. ನಿಮ್ಮಲ್ಲಿನ ಇಬ್ಬರು ನ್ಯಾಯವಂತರನ್ನು ಸಾಕ್ಷಿ ನಿಲ್ಲಿಸಿರಿ. ಅಲ್ಲಾಹನ ಸಂಪ್ರೀತಿಗಾಗಿ ಸರಿಯಾದ ರೀತಿಯಲ್ಲಿ ಸಾಕ್ಷಿ ಹೇಳಿರಿ. ಇದು ಅಲ್ಲಾಹನಲ್ಲಿ ಮತ್ತು ಅಂತ್ಯದಿನದಲ್ಲಿ ವಿಶ್ವಾಸವಿಡುವವರಿಗೆ ನೀಡಲಾಗುವ ಉಪದೇಶವಾಗಿದೆ. ಯಾರು ಅಲ್ಲಾಹನನ್ನು ಭಯಪಡುತ್ತಾನೋ ಅವನಿಗೆ ಅಲ್ಲಾಹು ನಿರ್ಗಮನ ದ್ವಾರವನ್ನು ಮಾಡಿಕೊಡುತ್ತಾನೆ.

فَإِذَا بَلَغۡنَ أَجَلَهُنَّ فَأَمۡسِكُوهُنَّ بِمَعۡرُوفٍ
أَوۡ فَارِقُوهُنَّ بِمَعۡرُوفٖ وَأَشۡهِدُواْ ذَوَيۡ عَدۡلٖ
مِّنكُمۡ وَأَقِيمُواْ ٱلشَّهَٰدَةَ لِلَّهِۚ ذَٰلِكُمۡ يُوعَظُ
بِهِۦ مَن كَانَ يُؤۡمِنُ بِٱللَّهِ وَٱلۡيَوۡمِ ٱلۡأٓخِرِۚ وَمَن
يَتَّقِ ٱللَّهَ يَجۡعَل لَّهُۥ مَخۡرَجٗا ٢

3. ಅವನು ಊಹಿಸಿರದ ಕಡೆಯಿಂದ ಅವನಿಗೆ ಉಪಜೀವನವನ್ನು ಒದಗಿಸುತ್ತಾನೆ. ಯಾರು ಅಲ್ಲಾಹನಲ್ಲಿ ಭರವಸೆಯಿಡುತ್ತಾನೋ ಅವನಿಗೆ ಅಲ್ಲಾಹು ಸಾಕು. ಅಲ್ಲಾಹು ತನ್ನ ಕಾರ್ಯವನ್ನು ಖಂಡಿತ ಪೂರ್ಣಗೊಳಿಸುತ್ತಾನೆ. ಅಲ್ಲಾಹು ಪ್ರತಿಯೊಂದು ವಸ್ತುವಿಗೂ ಒಂದು ನಿಶ್ಚಿತ ನಿರ್ಣಯವನ್ನು ಮಾಡಿದ್ದಾನೆ.

وَيَرۡزُقۡهُ مِنۡ حَيۡثُ لَا يَحۡتَسِبُۚ وَمَن يَتَوَكَّلۡ
عَلَى ٱللَّهِ فَهُوَ حَسۡبُهُۥٓۚ إِنَّ ٱللَّهَ بَٰلِغُ أَمۡرِهِۦۚ قَدۡ
جَعَلَ ٱللَّهُ لِكُلِّ شَيۡءٖ قَدۡرٗا ٣

---

[1] ಅಂದರೆ ಪತ್ನಿ ಋತುಸ್ರಾವದಿಂದ ಶುದ್ಧಿಯಾಗಿ ಆಕೆಯೊಡನೆ ಸಂಭೋಗ ನಡೆಸುವ ಮುನ್ನ ತಲಾಕ್ (ವಿಚ್ಛೇದನ) ನೀಡಿರಿ. ಮಹಿಳೆಯ ಶುದ್ಧಾವಸ್ಥೆಯು ಇದ್ದತ್‌ನ ಆರಂಭವಾಗಿದೆ. ಋತುಸ್ರಾವದ ಅವಧಿಯಲ್ಲಿ ಅಥವಾ ಶುದ್ಧಿಯಾಗಿ ಸಂಭೋಗ ನಡೆಸಿದ ನಂತರ ತಲಾಕ್ ನೀಡಬಾರದು.

4. ನಿಮ್ಮ ಮಹಿಳೆಯರಲ್ಲಿ ಋತುಸ್ರಾವದ ಬಗ್ಗೆ ನಿರೀಕ್ಷೆ ಕಳಕೊಂಡವರು[1] ಯಾರೋ—ನಿಮಗೆ ಸಂದೇಹವಿದ್ದರೆ ಅವರ ಇದ್ದತ್ (ದೀಕ್ಷಾಕಾಲ) ಮೂರು ತಿಂಗಳುಗಳಾಗಿವೆ. ಅದೇ ರೀತಿ ಋತುಸ್ರಾವ ಪ್ರಾರಂಭವಾಗದಿರುವವರು ಕೂಡ.[2] ಗರ್ಭಿಣಿಯರ ಇದ್ದತ್ ಅವರು ಮಗುವಿಗೆ ಜನ್ಮ ನೀಡುವ ತನಕ. ಯಾರು ಅಲ್ಲಾಹನನ್ನು ಭಯಪಡುತ್ತಾನೋ ಅವನಿಗೆ ಅಲ್ಲಾಹು ಅವನ ವಿಷಯವನ್ನು ಸುಲಭಗೊಳಿಸುತ್ತಾನೆ.

وَٱلَّٰٓـِٔي يَئِسۡنَ مِنَ ٱلۡمَحِيضِ مِن نِّسَآئِكُمۡ إِنِ ٱرۡتَبۡتُمۡ فَعِدَّتُهُنَّ ثَلَٰثَةُ أَشۡهُرٖ وَٱلَّٰٓـِٔي لَمۡ يَحِضۡنَۚ وَأُوْلَٰتُ ٱلۡأَحۡمَالِ أَجَلُهُنَّ أَن يَضَعۡنَ حَمۡلَهُنَّۚ وَمَن يَتَّقِ ٱللَّهَ يَجۡعَل لَّهُۥ مِنۡ أَمۡرِهِۦ يُسۡرٗا ٤

5. ಇದು ಅಲ್ಲಾಹು ನಿಮಗೆ ಅವತೀರ್ಣಗೊಳಿಸಿದ ಅವನ ಆಜ್ಞೆಯಾಗಿದೆ. ಯಾರು ಅಲ್ಲಾಹನನ್ನು ಭಯಪಡುತ್ತಾನೋ ಅವನ ಪಾಪಗಳನ್ನು ಅಲ್ಲಾಹು ಅಳಿಸುತ್ತಾನೆ ಮತ್ತು ಅವನಿಗೆ ಮಹಾ ಪ್ರತಿಫಲವನ್ನು ನೀಡುತ್ತಾನೆ.

ذَٰلِكَ أَمۡرُ ٱللَّهِ أَنزَلَهُۥٓ إِلَيۡكُمۡۚ وَمَن يَتَّقِ ٱللَّهَ يُكَفِّرۡ عَنۡهُ سَيِّـَٔاتِهِۦ وَيُعۡظِمۡ لَهُۥٓ أَجۡرًا ٥

6. ನೀವು ನಿಮ್ಮ ಸಾಮರ್ಥ್ಯಕ್ಕೆ ಅನುಗುಣವಾಗಿ ನೀವು ಎಲ್ಲಿ ವಾಸಿಸುತ್ತೀರೋ ಅಲ್ಲೇ ಅವರನ್ನು (ವಿಚ್ಛೇದಿತೆಯರನ್ನು) ವಾಸ ಮಾಡಿಸಿರಿ. ಅವರಿಗೆ ಇಕ್ಕಟ್ಟಾಗುವಂತೆ ಮಾಡುವುದಕ್ಕಾಗಿ ತೊಂದರೆ ಕೊಡಬೇಡಿ. ಅವರು ಗರ್ಭಿಣಿಯರಾಗಿದ್ದರೆ ಅವರು ಮಗುವಿಗೆ ಜನ್ಮ ನೀಡುವ ತನಕ ಅವರ ಖರ್ಚುವೆಚ್ಚಗಳನ್ನು ನೋಡಿಕೊಳ್ಳಿರಿ. ನಿಮ್ಮ ವಿನಂತಿಯ ಮೇರೆಗೆ ಅವರು ಮಗುವಿಗೆ ಸ್ತನಪಾನ ಮಾಡುವುದಾದರೆ ಅವರಿಗೆ ಅದರ ವೇತನವನ್ನು ನೀಡಿರಿ. ನೀವು ಪರಸ್ಪರ ಸೂಕ್ತ ರೀತಿಯಲ್ಲಿ ಸಮಾಲೋಚನೆ ಮಾಡಿರಿ. ನಿಮಗೆ ಪರಸ್ಪರ ತರ್ಕವಾದರೆ ಅವನ ವಿನಂತಿಯ ಮೇರೆಗೆ ಬೇರೊಬ್ಬಳು ಮಹಿಳೆ ಮಗುವಿಗೆ ಸ್ತನಪಾನ ಮಾಡಲಿ.

أَسۡكِنُوهُنَّ مِنۡ حَيۡثُ سَكَنتُم مِّن وُجۡدِكُمۡ وَلَا تُضَآرُّوهُنَّ لِتُضَيِّقُواْ عَلَيۡهِنَّۚ وَإِن كُنَّ أُوْلَٰتِ حَمۡلٖ فَأَنفِقُواْ عَلَيۡهِنَّ حَتَّىٰ يَضَعۡنَ حَمۡلَهُنَّۚ فَإِنۡ أَرۡضَعۡنَ لَكُمۡ فَـَٔاتُوهُنَّ أُجُورَهُنَّ وَأۡتَمِرُواْ بَيۡنَكُم بِمَعۡرُوفٖۖ وَإِن تَعَاسَرۡتُمۡ فَسَتُرۡضِعُ لَهُۥٓ أُخۡرَىٰ ٦

7. ಅನುಕೂಲವಿರುವವನು ತನ್ನ ಅನುಕೂಲಕ್ಕೆ ತಕ್ಕಂತೆ ಖರ್ಚು ಮಾಡಲಿ. ಯಾರಿಗೆ ಅವನ ಉಪಜೀವನವನ್ನು ಇಕ್ಕಟ್ಟುಗೊಳಿಸಲಾಗಿದೆಯೋ ಅವನಿಗೆ ಅಲ್ಲಾಹು ಏನು ನೀಡಿದ್ದಾನೋ ಅದರಿಂದ (ಅವನ ಸಾಮರ್ಥ್ಯಕ್ಕೆ ತಕ್ಕಂತೆ) ಖರ್ಚು ಮಾಡಲಿ. ಅಲ್ಲಾಹು ಯಾರ ಮೇಲೂ (ಖರ್ಚು ಮಾಡಲು) ಬಲವಂತಪಡಿಸುವುದಿಲ್ಲ. ಅವನಿಗೆ ಅಲ್ಲಾಹು ಎಷ್ಟು ನೀಡಿದ್ದಾನೋ ಅಷ್ಟನ್ನೇ ಹೊರತು. ಅಲ್ಲಾಹು ಇಕ್ಕಟ್ಟಿನ ನಂತರ ಅನುಕೂಲತೆಯನ್ನು ಮಾಡಿಕೊಡುವನು.

لِيُنفِقۡ ذُو سَعَةٖ مِّن سَعَتِهِۦۖ وَمَن قُدِرَ عَلَيۡهِ رِزۡقُهُۥ فَلۡيُنفِقۡ مِمَّآ ءَاتَىٰهُ ٱللَّهُۚ لَا يُكَلِّفُ ٱللَّهُ نَفۡسًا إِلَّا مَآ ءَاتَىٰهَاۚ سَيَجۡعَلُ ٱللَّهُ بَعۡدَ عُسۡرٖ يُسۡرٗا ٧

[1] ಅಂದರೆ ಮುಟ್ಟು ನಿಂತವರು.

[2] ಅಂದರೆ ಮುಟ್ಟು ಪ್ರಾರಂಭವಾಗದವರು. ಕೆಲವೊಮ್ಮೆ ಹುಡುಗಿಯರು ಪ್ರೌಢಾವಸ್ಥೆಗೆ ತಲುಪಿಯೂ ಕೂಡ ಮುಟ್ಟು ಪ್ರಾರಂಭವಾಗದ ಸನ್ನಿವೇಶಗಳಿವೆ.

| | | |
|---|---|---|
| 8. | ಎಷ್ಟೋ ಊರಿನವರು ಅವರ ಪರಿಪಾಲಕನ (ಅಲ್ಲಾಹನ) ಆಜ್ಞೆಯನ್ನು ಮತ್ತು ಅವನ ಸಂದೇಶವಾಹಕರನ್ನು ಧಿಕ್ಕರಿಸಿದ್ದರು. ನಾವು ಅವರನ್ನು ಕಠೋರವಾಗಿ ವಿಚಾರಣೆ ಮಾಡಿದೆವು ಮತ್ತು ಅವರನ್ನು ಅತ್ಯಂತ ಕ್ರೂರವಾಗಿ ಶಿಕ್ಷಿಸಿದೆವು. | وَكَأَيِّن مِّن قَرۡيَةٍ عَتَتۡ عَنۡ أَمۡرِ رَبِّهَا وَرُسُلِهِۦ فَحَاسَبۡنَٰهَا حِسَابٗا شَدِيدٗا وَعَذَّبۡنَٰهَا عَذَابٗا نُّكۡرٗا ٨ |
| 9. | ಅವರು ಅವರ ದುಷ್ಕರ್ಮಗಳ ರುಚಿಯನ್ನು ನೋಡಿದರು. ಅವರ ದುಷ್ಕರ್ಮಗಳ ಅಂತಿಮ ಫಲಿತಾಂಶವು ನಷ್ಟವೇ ಆಗಿತ್ತು. | فَذَاقَتۡ وَبَالَ أَمۡرِهَا وَكَانَ عَٰقِبَةُ أَمۡرِهَا خُسۡرًا ٩ |
| 10. | ಅಲ್ಲಾಹು ಅವರಿಗೆ ಕಠೋರ ಶಿಕ್ಷೆಯನ್ನು ಸಿದ್ಧಗೊಳಿಸಿದ್ದಾನೆ. ಆದ್ದರಿಂದ ಸತ್ಯವಿಶ್ವಾಸಿಗಳಾದ ಓ ಬುದ್ಧಿವಂತರೇ! ಅಲ್ಲಾಹನನ್ನು ಭಯಪಡಿರಿ. ನಿಶ್ಚಯವಾಗಿಯೂ ಅಲ್ಲಾಹು ನಿಮಗೆ ಉಪದೇಶವನ್ನು ಅವತೀರ್ಣಗೊಳಿಸಿದ್ದಾನೆ. | أَعَدَّ ٱللَّهُ لَهُمۡ عَذَابٗا شَدِيدٗاۖ فَٱتَّقُواْ ٱللَّهَ يَٰٓأُوْلِي ٱلۡأَلۡبَٰبِ ٱلَّذِينَ ءَامَنُواْۚ قَدۡ أَنزَلَ ٱللَّهُ إِلَيۡكُمۡ ذِكۡرٗا ١٠ |
| 11. | ಅಲ್ಲಾಹು ನಿಮಗೆ ಒಬ್ಬ ಸಂದೇಶವಾಹಕರನ್ನು ಕಳುಹಿಸಿದ್ದಾನೆ. ಅವರು ನಿಮಗೆ ಅಲ್ಲಾಹನ ಸ್ಪಷ್ಟ ವಚನಗಳನ್ನು ಓದಿಕೊಡುತ್ತಾರೆ. ಸತ್ಯವಿಶ್ವಾಸಿಗಳನ್ನು ಮತ್ತು ಸತ್ಕರ್ಮವೆಸಗಿದವರನ್ನು ಕತ್ತಲೆಗಳಿಂದ ಬೆಳಕಿಗೆ ತರುವುದಕ್ಕಾಗಿ. ಯಾರು ಅಲ್ಲಾಹನಲ್ಲಿ ವಿಶ್ವಾಸವಿಡು-ತ್ತಾನೋ ಮತ್ತು ಸತ್ಕರ್ಮವೆಸಗುತ್ತಾನೋ ಅಲ್ಲಾಹು ಅವನನ್ನು ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳಿಗೆ ಪ್ರವೇಶ ಮಾಡಿಸುವನು. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅಲ್ಲಾಹು ಅವನಿಗೆ ಅತ್ಯುತ್ತಮ ಉಪಜೀವನವನ್ನು ನೀಡಿದ್ದಾನೆ. | رَّسُولٗا يَتۡلُواْ عَلَيۡكُمۡ ءَايَٰتِ ٱللَّهِ مُبَيِّنَٰتٖ لِّيُخۡرِجَ ٱلَّذِينَ ءَامَنُواْ وَعَمِلُواْ ٱلصَّٰلِحَٰتِ مِنَ ٱلظُّلُمَٰتِ إِلَى ٱلنُّورِۚ وَمَن يُؤۡمِنۢ بِٱللَّهِ وَيَعۡمَلۡ صَٰلِحٗا يُدۡخِلۡهُ جَنَّٰتٖ تَجۡرِي مِن تَحۡتِهَا ٱلۡأَنۡهَٰرُ خَٰلِدِينَ فِيهَآ أَبَدٗاۖ قَدۡ أَحۡسَنَ ٱللَّهُ لَهُۥ رِزۡقًا ١١ |
| 12. | ಅಲ್ಲಾಹನೇ ಏಳು ಆಕಾಶಗಳನ್ನು ಮತ್ತು ಅಷ್ಟೇ ಸಂಖ್ಯೆಯ ಭೂಮಿಗಳನ್ನು ಸೃಷ್ಟಿಸಿದವನು. ಅವುಗಳ ಮಧ್ಯೆ ಅವನ ಆಜ್ಞೆಯು ಇಳಿಯುತ್ತದೆ. ಇದೇಕೆಂದರೆ, ಅಲ್ಲಾಹು ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ ಮತ್ತು ಅವನು ಎಲ್ಲಾ ವಸ್ತುಗಳನ್ನೂ ತನ್ನ ಜ್ಞಾನದಿಂದ ಪೂರ್ಣವಾಗಿ ಆವರಿಸಿಕೊಂಡಿದ್ದಾನೆ ಎಂದು ನೀವು ತಿಳಿಯುವುದಕ್ಕಾಗಿ. | ٱللَّهُ ٱلَّذِي خَلَقَ سَبۡعَ سَمَٰوَٰتٖ وَمِنَ ٱلۡأَرۡضِ مِثۡلَهُنَّۖ يَتَنَزَّلُ ٱلۡأَمۡرُ بَيۡنَهُنَّ لِتَعۡلَمُوٓاْ أَنَّ ٱللَّهَ عَلَىٰ كُلِّ شَيۡءٖ قَدِيرٞ وَأَنَّ ٱللَّهَ قَدۡ أَحَاطَ بِكُلِّ شَيۡءٍ عِلۡمَۢا ١٢ |

# 66. ಅತ್ತಹ್ರೀಮ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسْمِ ٱللَّهِ ٱلرَّحْمَٰنِ ٱلرَّحِيمِ

1. ಓ ಪ್ರವಾದಿಯವರೇ! ಅಲ್ಲಾಹು ನಿಮಗೆ ಧರ್ಮಸಮ್ಮತಗೊಳಿಸಿದ ವಸ್ತುವನ್ನು ನೀವೇಕೆ ನಿಷಿದ್ಧಗೊಳಿಸುತ್ತೀರಿ? ನೀವು ನಿಮ್ಮ ಪತ್ನಿಯರ ಸಂಪ್ರೀತಿಯನ್ನು ಪಡೆಯಲು ಬಯಸುತ್ತೀರಾ? ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.[1]

يَٰٓأَيُّهَا ٱلنَّبِيُّ لِمَ تُحَرِّمُ مَآ أَحَلَّ ٱللَّهُ لَكَۖ تَبْتَغِي مَرْضَاتَ أَزْوَٰجِكَۚ وَٱللَّهُ غَفُورٌ رَّحِيمٌ ١

2. ಅಲ್ಲಾಹು ನಿಮಗೆ ನಿಮ್ಮ ಆಣೆಗಳ ವಿಮುಕ್ತತೆಯನ್ನು ಈಗಾಗಲೇ ನಿಶ್ಚಯಿಸಿದ್ದಾನೆ.[2] ಅಲ್ಲಾಹು ನಿಮ್ಮ ರಕ್ಷಕನಾಗಿದ್ದಾನೆ. ಅವನು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ.

قَدْ فَرَضَ ٱللَّهُ لَكُمْ تَحِلَّةَ أَيْمَٰنِكُمْۚ وَٱللَّهُ مَوْلَىٰكُمْۖ وَهُوَ ٱلْعَلِيمُ ٱلْحَكِيمُ ٢

3. ಪ್ರವಾದಿಯವರು ತಮ್ಮ ಪತ್ನಿಯರಲ್ಲಿ ಒಬ್ಬಳಿಗೆ ಗುಟ್ಟಾಗಿ ಒಂದು ಮಾತನ್ನು ಹೇಳಿದ ಸಂದರ್ಭ(ವನ್ನು ಸ್ಮರಿಸಿ).[3] ಅವಳು ಅದನ್ನು (ಇನ್ನೊಬ್ಬ ಪತ್ನಿಗೆ) ತಿಳಿಸಿದಾಗ ಮತ್ತು ಅಲ್ಲಾಹು ತನ್ನ ಪ್ರವಾದಿಗೆ ಅದನ್ನು ಬಹಿರಂಗಪಡಿಸಿದಾಗ, ಅವರು ಅದರ ಕೆಲವು ಭಾಗಗಳನ್ನು (ಪತ್ನಿಗೆ) ತಿಳಿಸಿ ಕೆಲವು ಭಾಗಗಳನ್ನು ನಿರ್ಲಕ್ಷಿಸಿದರು. ನಂತರ ಅವರು ಅದನ್ನು ಪತ್ನಿಗೆ ತಿಳಿಸಿದಾಗ ಅವಳು ಕೇಳಿದಳು: "ನಿಮಗೆ ಇದನ್ನು ತಿಳಿಸಿದ್ದು ಯಾರು?" ಅವರು ಉತ್ತರಿಸಿದರು: "ಸರ್ವಜ್ಞನು ಮತ್ತು ಸೂಕ್ಷ್ಮಜ್ಞಾನಿಯಾದ ಅಲ್ಲಾಹು ನನಗೆ ತಿಳಿಸಿದನು."

وَإِذْ أَسَرَّ ٱلنَّبِيُّ إِلَىٰ بَعْضِ أَزْوَٰجِهِۦ حَدِيثًا فَلَمَّا نَبَّأَتْ بِهِۦ وَأَظْهَرَهُ ٱللَّهُ عَلَيْهِ عَرَّفَ بَعْضَهُۥ وَأَعْرَضَ عَنۢ بَعْضٍۖ فَلَمَّا نَبَّأَهَا بِهِۦ قَالَتْ مَنْ أَنۢبَأَكَ هَٰذَاۖ قَالَ نَبَّأَنِيَ ٱلْعَلِيمُ ٱلْخَبِيرُ ٣

4. (ಪ್ರವಾದಿಯ ಇಬ್ಬರು ಪತ್ನಿಯರೇ!) ನೀವು ಅಲ್ಲಾಹನ ಮುಂದೆ ಪಶ್ಚಾತ್ತಾಪಪಡುವುದಾದರೆ (ಅದು ಉತ್ತಮವಾಗಿದೆ). ನಿಶ್ಚಯವಾಗಿಯೂ ನಿಮ್ಮ ಹೃದಯಗಳು ವಕ್ರವಾಗಿವೆ.

إِن تَتُوبَآ إِلَى ٱللَّهِ فَقَدْ صَغَتْ قُلُوبُكُمَاۖ وَإِن تَظَٰهَرَا عَلَيْهِ فَإِنَّ ٱللَّهَ هُوَ مَوْلَىٰهُ

---

[1] ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅವರ ಪತ್ನಿ ಝೈನಬ್ ಬಿಂತ್ ಜಹ್ಶ್ (ಅವರ ಬಗ್ಗೆ ಅಲ್ಲಾಹು ಸಂಪ್ರೀತನಾಗಲಿ) ರವರ ಮನೆಯಲ್ಲಿ ಸ್ವಲ್ಪ ಹೊತ್ತು ತಂಗಿ ಅಲ್ಲಿ ಜೇನು ಸವಿಯುತ್ತಿದ್ದರು. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಝೈನಬರ ಮನೆಯಲ್ಲಿ ಹೆಚ್ಚು ತಂಗುವುದನ್ನು ನಿಲ್ಲಿಸಲು ಆಯಿಶ ಮತ್ತು ಹಫ್ಸ (ಅಲ್ಲಾಹು ಅವರಿಬ್ಬರ ಬಗ್ಗೆ ಸಂಪ್ರೀತನಾಗಲಿ) ಒಂದು ಉಪಾಯ ಹೂಡಿದರು. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಇವರಿಬ್ಬರಲ್ಲಿ ಯಾರ ಬಳಿಗೆ ಮೊದಲು ಬಂದರೂ ಅವರ ಬಾಯಿಂದ ಒಂದು ರೀತಿಯ ಕೆಟ್ಟ ಪರಿಮಳ ಬರುತ್ತದೆ ಎಂದು ಹೇಳಬೇಕು ಎಂದು ಇವರಿಬ್ಬರು ನಿರ್ಧರಿಸಿದರು. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಬಂದಾಗ ಅವರು ಇದೇ ರೀತಿ ಹೇಳಿದರು. ಆಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇಳಿದರು: "ನಾನು ಝೈನಬರ ಮನೆಯಲ್ಲಿ ಸ್ವಲ್ಪ ಜೇನು ಸವಿದಿದ್ದೆ. ಇನ್ನು ಮುಂದೆ ನಾನು ಅದನ್ನು ಕುಡಿಯುವುದಿಲ್ಲವೆಂದು ಆಣೆ ಮಾಡುತ್ತೇನೆ. ಆದರೆ ಈ ವಿಷಯವನ್ನು ನೀನು ಯಾರಿಗೂ ತಿಳಿಸಬಾರದು."

[2] ಅಂದರೆ ಆಣೆಯನ್ನು ಉಲ್ಲಂಘಿಸಿದರೆ ಅದಕ್ಕೆ ನೀಡಬೇಕಾದ ಪರಿಹಾರವನ್ನು ಅಲ್ಲಾಹು ಈಗಾಗಲೇ ನಿಶ್ಚಯಿಸಿದ್ದಾನೆ.

[3] ನಾನು ಇನ್ನು ಮುಂದೆ ಜೇನು ಸೇವಿಸುವುದಿಲ್ಲವೆಂದು ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಪತ್ನಿ ಹಫ್ಸರಿಗೆ ತಿಳಿಸಿದ್ದರು. ಅವರು ಅದನ್ನು ಆಯಿಶರಿಗೆ ತಿಳಿಸಿದರು.

وَجِبۡرِيلُ وَصَٰلِحُ ٱلۡمُؤۡمِنِينَۖ وَٱلۡمَلَٰٓئِكَةُ بَعۡدَ
ذَٰلِكَ ظَهِيرٌ ٤

ಆದರೆ ನೀವು ಪ್ರವಾದಿಯ ವಿರುದ್ಧ ಪರಸ್ಪರ ಸಹಾಯ ಮಾಡುವುದಾದರೆ ನಿಶ್ಚಯವಾಗಿಯೂ ಅಲ್ಲಾಹು ಅವರ ರಕ್ಷಕ-ನಾಗಿದ್ದಾನೆ. ಜಿಬ್ರೀಲ್, ನೀತಿವಂತರಾದ ಸತ್ಯವಿಶ್ವಾಸಿಗಳು ಮತ್ತು ಅವರೆಲ್ಲರ ಹೊರತಾಗಿ ದೇವದೂತರುಗಳು ಕೂಡ ಅವರಿಗೆ ಸಹಾಯ ಮಾಡಲಿದ್ದಾರೆ.

---

عَسَىٰ رَبُّهُۥٓ إِن طَلَّقَكُنَّ أَن يُبۡدِلَهُۥٓ أَزۡوَٰجًا
خَيۡرًا مِّنكُنَّ مُسۡلِمَٰتٖ مُّؤۡمِنَٰتٖ قَٰنِتَٰتٖ
تَٰٓئِبَٰتٍ عَٰبِدَٰتٖ سَٰٓئِحَٰتٖ ثَيِّبَٰتٖ وَأَبۡكَارٗا ٥

5. ಅವರು ನಿಮಗೆ ವಿಚ್ಛೇದನೆ (ತಲಾಕ್) ನೀಡಿದರೆ, ಅವರ ಪರಿಪಾಲಕನು (ಅಲ್ಲಾಹು) ಅವರಿಗೆ ನಿಮಗಿಂತಲೂ ಉತ್ತಮ ಪತ್ನಿಯರನ್ನು ಬದಲಿಯಾಗಿ ನೀಡುವನು. ಅವರು ಮುಸ್ಲಿಮರು, ಸತ್ಯವಿಶ್ವಾಸಿಗಳು, ದೇವಭಯವುಳ್ಳವರು, ಪಶ್ಚಾತ್ತಾಪಪ-ಡುವವರು, ಆರಾಧನೆಯಲ್ಲಿ ಮಗ್ನರಾಗುವವರು, ಉಪವಾಸ ಆಚರಿಸುವವರು, ವಿಧವೆಗಳು ಮತ್ತು ಕನ್ಯೆಯರಾಗಿರುವರು.

---

يَٰٓأَيُّهَا ٱلَّذِينَ ءَامَنُواْ قُوٓاْ أَنفُسَكُمۡ وَأَهۡلِيكُمۡ
نَارٗا وَقُودُهَا ٱلنَّاسُ وَٱلۡحِجَارَةُ عَلَيۡهَا مَلَٰٓئِكَةٌ
غِلَاظٞ شِدَادٞ لَّا يَعۡصُونَ ٱللَّهَ مَآ أَمَرَهُمۡ
وَيَفۡعَلُونَ مَا يُؤۡمَرُونَ ٦

6. ಓ ಸತ್ಯವಿಶ್ವಾಸಿಗಳೇ! ನೀವು ನಿಮ್ಮನ್ನು ಮತ್ತು ನಿಮ್ಮ ಮನೆಯವರನ್ನು ನರಕಾಗ್ನಿಯಿಂದ ಪಾರು ಮಾಡಿರಿ. ಅದರ ಇಂಧನವು ಮನುಷ್ಯರು ಮತ್ತು ಕಲ್ಲುಗಳಾಗಿವೆ. ಅದರ ಮೇಲೆ ಕಠೋರ ಹೃದಯದ ಬಲಿಷ್ಠ ದೇವದೂತರುಗಳಿದ್ದಾರೆ. ಅಲ್ಲಾಹನ ಯಾವುದೇ ಆಜ್ಞೆಯನ್ನೂ ಅವರು ಧಿಕ್ಕರಿಸುವುದಿಲ್ಲ. ಅವರಿಗೆ ಆಜ್ಞಾಪಿಸಲಾಗುವುದೆಲ್ಲವನ್ನೂ ಅವರು ನಿರ್ವಹಿಸುತ್ತಾರೆ.

---

يَٰٓأَيُّهَا ٱلَّذِينَ كَفَرُواْ لَا تَعۡتَذِرُواْ ٱلۡيَوۡمَۖ إِنَّمَا
تُجۡزَوۡنَ مَا كُنتُمۡ تَعۡمَلُونَ ٧

7. ಓ ಸತ್ಯನಿಷೇಧಿಗಳೇ! ಇಂದು ನೀವು ನೆಪಗಳನ್ನು ಹೇಳಬೇಡಿ. ನಿಮಗೆ ನಿಮ್ಮ ಕರ್ಮಗಳ ಪ್ರತಿಫಲವನ್ನು ಮಾತ್ರ ನೀಡಲಾಗುವುದು.

---

يَٰٓأَيُّهَا ٱلَّذِينَ ءَامَنُواْ تُوبُوٓاْ إِلَى ٱللَّهِ تَوۡبَةٗ
نَّصُوحًا عَسَىٰ رَبُّكُمۡ أَن يُكَفِّرَ عَنكُمۡ
سَيِّـَٔاتِكُمۡ وَيُدۡخِلَكُمۡ جَنَّٰتٖ تَجۡرِي مِن
تَحۡتِهَا ٱلۡأَنۡهَٰرُ يَوۡمَ لَا يُخۡزِي ٱللَّهُ ٱلنَّبِيَّ وَٱلَّذِينَ
ءَامَنُواْ مَعَهُۥۖ نُورُهُمۡ يَسۡعَىٰ بَيۡنَ أَيۡدِيهِمۡ
وَبِأَيۡمَٰنِهِمۡ يَقُولُونَ رَبَّنَآ أَتۡمِمۡ لَنَا نُورَنَا وَٱغۡفِرۡ
لَنَآۖ إِنَّكَ عَلَىٰ كُلِّ شَيۡءٖ قَدِيرٞ ٨

8. ಓ ಸತ್ಯವಿಶ್ವಾಸಿಗಳೇ! ನೀವು ಅಲ್ಲಾಹನ ಮುಂದೆ ನಿಷ್ಕಳಂಕವಾಗಿ ಪಶ್ಚಾತ್ತಾಪಪಡಿರಿ. ನಿಮ್ಮ ಪರಿಪಾಲಕನು (ಅಲ್ಲಾಹು) ನಿಮ್ಮ ಪಾಪಗಳನ್ನು ಅಳಿಸಿಬಿಡಬಹುದು ಮತ್ತು ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳಿಗೆ ನಿಮ್ಮನ್ನು ಪ್ರವೇಶ ಮಾಡಿಸಬಹುದು. ಅದು ಅಲ್ಲಾಹು ಪ್ರವಾದಿಯನ್ನು ಮತ್ತು ಅವರ ಜೊತೆಯಲ್ಲಿರುವ ಸತ್ಯವಿಶ್ವಾಸಿಗಳನ್ನು ಅವಮಾನಿಸದ ದಿನ. ಅವರ ಬೆಳಕು ಅವರ ಮುಂಭಾಗದಿಂದ ಮತ್ತು ಬಲಭಾಗದಿಂದ ಹರಿಯುತ್ತಿರುವುದು. ಅವರು ಹೇಳುವರು: "ನಮ್ಮ ಪರಿಪಾಲಕನೇ! ನಮ್ಮ ಬೆಳಕನ್ನು ನಮಗೆ ಪೂರ್ಣವಾಗಿ ನೀಡು. ನಮ್ಮನ್ನು ಕ್ಷಮಿಸು. ನಿಶ್ಚಯವಾಗಿಯೂ ನಿನಗೆ ಎಲ್ಲಾ ವಿಷಯಗಳಲ್ಲೂ ಸಾಮರ್ಥ್ಯವಿದೆ."

---

يَٰٓأَيُّهَا ٱلنَّبِيُّ جَٰهِدِ ٱلۡكُفَّارَ وَٱلۡمُنَٰفِقِينَ

9. ಓ ಪ್ರವಾದಿಯವರೇ! ಸತ್ಯನಿಷೇಧಿಗಳು ಮತ್ತು ಕಪಟವಿಶ್ವಾಸಿಗಳ

ವಿರುದ್ಧ ಹೋರಾಡಿರಿ. ಅವರೊಡನೆ ಕಠೋರವಾಗಿ ವರ್ತಿಸಿರಿ. ನರಕವೇ ಅವರ ವಾಸಸ್ಥಳ. ಆ ಗಮ್ಯಸ್ಥಾನವು ಬಹಳ ನಿಕೃಷ್ಟವಾಗಿದೆ.

وَٱغۡلُظۡ عَلَيۡهِمۡۚ وَمَأۡوَىٰهُمۡ جَهَنَّمُۖ وَبِئۡسَ ٱلۡمَصِيرُ ٩

---

10. ಅಲ್ಲಾಹು ಸತ್ಯನಿಷೇಧಿಗಳಿಗೆ ನೂಹರ ಪತ್ನಿ ಮತ್ತು ಲೂತರ ಪತ್ನಿಯನ್ನು ಉದಾಹರಣೆಯಾಗಿ ತೋರಿಸಿದ್ದಾನೆ. ಇವರಿಬ್ಬರು ನಮ್ಮ ದಾಸರಲ್ಲಿ ನೀತಿವಂತರಾಗಿದ್ದ ಇಬ್ಬರು ದಾಸರ ಮನೆಯಲ್ಲಿ ವಾಸವಾಗಿದ್ದರು. ಆದರೆ ಅವರು (ಪತ್ನಿಯರು) ಅವರನ್ನು ವಂಚಿಸಿದರು. ಆಗ ಅಲ್ಲಾಹನ ಶಿಕ್ಷೆಯಿಂದ ಅವರನ್ನು ಪಾರು ಮಾಡಲು ಅವರಿಗೆ (ಆ ಇಬ್ಬರು ಪ್ರವಾದಿಗಳಿಗೆ) ಸಾಧ್ಯವಾಗಲಿಲ್ಲ. "ನರಕಾಗ್ನಿಯನ್ನು ಪ್ರವೇಶಿಸುವವರೊಡನೆ ನೀವು ಕೂಡ ಪ್ರವೇಶಿಸಿರಿ" ಎಂದು ಅವರೊಡನೆ (ಆ ಪತ್ನಿಯರೊಡನೆ) ಹೇಳಲಾಯಿತು.

ضَرَبَ ٱللَّهُ مَثَلٗا لِّلَّذِينَ كَفَرُواْ ٱمۡرَأَتَ نُوحٖ وَٱمۡرَأَتَ لُوطٖۖ كَانَتَا تَحۡتَ عَبۡدَيۡنِ مِنۡ عِبَادِنَا صَٰلِحَيۡنِ فَخَانَتَاهُمَا فَلَمۡ يُغۡنِيَا عَنۡهُمَا مِنَ ٱللَّهِ شَيۡـٔٗا وَقِيلَ ٱدۡخُلَا ٱلنَّارَ مَعَ ٱلدَّٰخِلِينَ ١٠

---

11. ಅಲ್ಲಾಹು ಸತ್ಯವಿಶ್ವಾಸಿಗಳಿಗೆ ಫರೋಹನ ಪತ್ನಿಯನ್ನು ಉದಾಹರಣೆಯಾಗಿ ತೋರಿಸಿದ್ದಾನೆ. ಅವಳು ಹೇಳಿದ ಸಂದರ್ಭ: "ನನ್ನ ಪರಿಪಾಲಕನೇ! ನನಗೆ ನಿನ್ನ ಬಳಿ ಸ್ವರ್ಗದಲ್ಲಿ ಒಂದು ಭವನವನ್ನು ನಿರ್ಮಿಸಿಕೊಡು. ನನ್ನನ್ನು ಫರೋಹ ಮತ್ತು ಅವನ ಕೃತ್ಯಗಳಿಂದ ರಕ್ಷಿಸು. ಅಕ್ರಮಿಗಳಾದ ಜನರಿಂದಲೂ ನನ್ನನ್ನು ರಕ್ಷಿಸು."

وَضَرَبَ ٱللَّهُ مَثَلٗا لِّلَّذِينَ ءَامَنُواْ ٱمۡرَأَتَ فِرۡعَوۡنَ إِذۡ قَالَتۡ رَبِّ ٱبۡنِ لِي عِندَكَ بَيۡتٗا فِي ٱلۡجَنَّةِ وَنَجِّنِي مِن فِرۡعَوۡنَ وَعَمَلِهِۦ وَنَجِّنِي مِنَ ٱلۡقَوۡمِ ٱلظَّٰلِمِينَ ١١

---

12. ಅದೇ ರೀತಿ ಇಮ್ರಾನರ ಮಗಳಾದ ಮರ್ಯಮರನ್ನು ಕೂಡ (ಉದಾಹರಣೆಯಾಗಿ ತೋರಿಸಿದ್ದಾನೆ). ಆಕೆ ತನ್ನ ಗುಹ್ಯಭಾಗವನ್ನು ಕಾಪಾಡಿದ್ದರು. ನಾವು ನಮ್ಮ ಕಡೆಯಿಂದ ಅದಕ್ಕೆ ಆತ್ಮವನ್ನು ಊದಿದೆವು. ಆಕೆ ತನ್ನ ಪರಿಪಾಲಕನ (ಅಲ್ಲಾಹನ) ವಚನಗಳಲ್ಲಿ ಮತ್ತು ಗ್ರಂಥಗಳಲ್ಲಿ ವಿಶ್ವಾಸವಿಟ್ಟಿದ್ದರು. ಆಕೆ ಆರಾಧನಾ ನಿರತರಲ್ಲಿ ಸೇರಿದವರಾಗಿದ್ದರು.

وَمَرۡيَمَ ٱبۡنَتَ عِمۡرَٰنَ ٱلَّتِيٓ أَحۡصَنَتۡ فَرۡجَهَا فَنَفَخۡنَا فِيهِ مِن رُّوحِنَا وَصَدَّقَتۡ بِكَلِمَٰتِ رَبِّهَا وَكُتُبِهِۦ وَكَانَتۡ مِنَ ٱلۡقَٰنِتِينَ ١٢

# 67. ಅಲ್-ಮುಲ್ಕ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಸಾರ್ವಭೌಮತ್ವವು ಯಾರ ಕೈಯ್ಯಲ್ಲಿದೆಯೋ ಅವನು ಸಮೃದ್ಧಪೂರ್ಣನಾಗಿದ್ದಾನೆ. ಅವನು ಎಲ್ಲ ವಿಷಯಗಳಲ್ಲೂ ಸಾಮರ್ಥ್ಯವುಳ್ಳವನಾಗಿದ್ದಾನೆ.

تَبَٰرَكَ ٱلَّذِي بِيَدِهِ ٱلۡمُلۡكُ وَهُوَ عَلَىٰ كُلِّ شَيۡءٖ قَدِيرٌ ١

2. ಅವನೇ ಮರಣ ಮತ್ತು ಜೀವನವನ್ನು ಸೃಷ್ಟಿಸಿದವನು. ನಿಮ್ಮಲ್ಲಿ ಅತ್ಯುತ್ತಮ ಕರ್ಮವೆಸಗುವವರು ಯಾರೆಂದು ನಿಮ್ಮನ್ನು ಪರೀಕ್ಷಿಸುವುದಕ್ಕಾಗಿ. ಅವನು ಪ್ರಬಲನು ಮತ್ತು ಕ್ಷಮಿಸುವವನಾಗಿದ್ದಾನೆ.

ٱلَّذِي خَلَقَ ٱلۡمَوۡتَ وَٱلۡحَيَوٰةَ لِيَبۡلُوَكُمۡ أَيُّكُمۡ أَحۡسَنُ عَمَلٗاۚ وَهُوَ ٱلۡعَزِيزُ ٱلۡغَفُورُ ٢

3. ಅವನೇ ಏಳು ಆಕಾಶಗಳನ್ನು ಅಂತಸ್ತುಗಳಾಗಿ ಸೃಷ್ಟಿಸಿದವನು. ನೀವು ಪರಮ ದಯಾಮಯನ ಸೃಷ್ಟಿಯಲ್ಲಿ ಯಾವುದೇ ಕುಂದು-ಕೊರತೆಯನ್ನು ಕಾಣಲಾರಿರಿ. ಎರಡನೇ ಬಾರಿ ದೃಷ್ಟಿಯನ್ನು ಮರಳಿಸಿ ನೋಡಿ. ನೀವು ಯಾವುದಾದರೂ ಬಿರುಕುಗಳನ್ನು ಕಾಣುತ್ತೀರಾ?

ٱلَّذِي خَلَقَ سَبۡعَ سَمَٰوَٰتٖ طِبَاقٗاۖ مَّا تَرَىٰ فِي خَلۡقِ ٱلرَّحۡمَٰنِ مِن تَفَٰوُتٖۖ فَٱرۡجِعِ ٱلۡبَصَرَ هَلۡ تَرَىٰ مِن فُطُورٖ ٣

4. ನಂತರ ಪುನಃ ಎರಡೆರಡು ಬಾರಿ ದೃಷ್ಟಿ ಹಾಯಿಸಿ ನೋಡಿ. ನಿಮ್ಮ ದೃಷ್ಟಿಯು ನಿಮ್ಮ ಬಳಿಗೆ ದಯನೀಯ ಸ್ಥಿತಿಯಲ್ಲಿ ಸುಸ್ತಾಗಿ ಮರಳಿ ಬರುವುದು.

ثُمَّ ٱرۡجِعِ ٱلۡبَصَرَ كَرَّتَيۡنِ يَنقَلِبۡ إِلَيۡكَ ٱلۡبَصَرُ خَاسِئٗا وَهُوَ حَسِيرٞ ٤

5. ನಾವು ಇಹಲೋಕದ ಆಕಾಶವನ್ನು ದೀಪಗಳಿಂದ (ನಕ್ಷತ್ರಗಳಿಂದ) ಅಲಂಕರಿಸಿದ್ದೇವೆ. ಅವುಗಳನ್ನು ಶೈತಾನರಿಗೆ ಹೊಡೆದೋಡಿಸುವ ಸಾಧನವಾಗಿ ಮಾಡಿದ್ದೇವೆ. ನಾವು ಅವರಿಗೆ ಧಗಧಗಿಸುವ ನರಕ ಶಿಕ್ಷೆಯನ್ನು ಸಿದ್ಧಗೊಳಿಸಿದ್ದೇವೆ.

وَلَقَدۡ زَيَّنَّا ٱلسَّمَآءَ ٱلدُّنۡيَا بِمَصَٰبِيحَ وَجَعَلۡنَٰهَا رُجُومٗا لِّلشَّيَٰطِينِۖ وَأَعۡتَدۡنَا لَهُمۡ عَذَابَ ٱلسَّعِيرِ ٥

6. ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ನಿಷೇಧಿಸಿದವರಿಗೆ ನರಕ ಶಿಕ್ಷೆಯಿದೆ. ಆ ಗಮ್ಯಸ್ಥಾನವು ಅತಿ ನಿಕೃಷ್ಟವಾಗಿದೆ.

وَلِلَّذِينَ كَفَرُواْ بِرَبِّهِمۡ عَذَابُ جَهَنَّمَۖ وَبِئۡسَ ٱلۡمَصِيرُ ٦

7. ಅವರನ್ನು ಅದಕ್ಕೆ ಎಸೆಯಲಾದಾಗ ಅವರು ಅದರ ದೊಡ್ಡ ಗರ್ಜನೆಯನ್ನು ಕೇಳುವರು.

إِذَآ أُلۡقُواْ فِيهَا سَمِعُواْ لَهَا شَهِيقٗا وَهِيَ تَفُورُ ٧

8. ಅದು (ಕ್ರೋಧದಿಂದ) ಇನ್ನೇನು ಸ್ಫೋಟಿಸುವಂತಿರುವುದು. ಅದಕ್ಕೆ ಒಂದೊಂದು ಗುಂಪನ್ನು ಎಸೆಯುವಾಗಲೆಲ್ಲಾ ಅದರ ಕಾವಲುಗಾರರು ಕೇಳುವರು: "ನಿಮ್ಮ ಬಳಿಗೆ ಒಬ್ಬ ಮುನ್ನೆಚ್ಚರಿಕೆಗಾರನು ಬರಲಿಲ್ಲವೇ?"

تَكَادُ تَمَيَّزُ مِنَ ٱلۡغَيۡظِۖ كُلَّمَآ أُلۡقِيَ فِيهَا فَوۡجٞ سَأَلَهُمۡ خَزَنَتُهَآ أَلَمۡ يَأۡتِكُمۡ نَذِيرٞ ٨

9. ಅವರು ಉತ್ತರಿಸುವರು: “ಹೌದು, ನಮ್ಮ ಬಳಿಗೆ ಒಬ್ಬ ಮುನ್ನೆಚ್ಚರಿಕೆಗಾರ ಬಂದಿದ್ದರು. ಆದರೆ ನಾವು ಅವರನ್ನು ನಿಷೇಧಿಸಿದೆವು. ನಾವು ಹೇಳಿದೆವು: ಅಲ್ಲಾಹು ಏನನ್ನೂ ಅವತೀರ್ಣಗೊಳಿಸಿಲ್ಲ; ನೀವು ಬಹುದೊಡ್ಡ ದುರ್ಮಾರ್ಗದಲ್ಲಿದ್ದೀರಿ.”

قَالُواْ بَلَىٰ قَدۡ جَآءَنَا نَذِيرٞ فَكَذَّبۡنَا وَقُلۡنَا مَا نَزَّلَ ٱللَّهُ مِن شَيۡءٍ إِنۡ أَنتُمۡ إِلَّا فِي ضَلَٰلٖ كَبِيرٖ ٩

10. ಅವರು (ಸತ್ಯನಿಷೇಧಿಗಳು) ಹೇಳುವರು: “ನಾವು ಕಿವಿಗೊಡುತ್ತಿದ್ದರೆ ಅಥವಾ ಅರ್ಥಮಾಡಿಕೊಳ್ಳುತ್ತಿದ್ದರೆ ನಾವು ನರಕವಾಸಿಗಳಲ್ಲಿ ಸೇರುತ್ತಿರಲಿಲ್ಲ.”

وَقَالُواْ لَوۡ كُنَّا نَسۡمَعُ أَوۡ نَعۡقِلُ مَا كُنَّا فِيٓ أَصۡحَٰبِ ٱلسَّعِيرِ ١٠

11. ಅವರು ತಮ್ಮ ತಪ್ಪನ್ನು ಒಪ್ಪಿಕೊಳ್ಳುವರು. ಆ ನರಕವಾಸಿಗಳು (ಅಲ್ಲಾಹನ ದಯೆಯಿಂದ) ದೂರವಾಗಲಿ.

فَٱعۡتَرَفُواْ بِذَنۢبِهِمۡ فَسُحۡقٗا لِّأَصۡحَٰبِ ٱلسَّعِيرِ ١١

12. ನಿಶ್ಚಯವಾಗಿಯೂ ಅದೃಶ್ಯ ಸ್ಥಿತಿಯಲ್ಲಿ ತಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಭಯಪಡುವವರು ಯಾರೋ ಅವರಿಗೆ ಕ್ಷಮೆ ಮತ್ತು ಮಹಾ ಪ್ರತಿಫಲವಿದೆ.

إِنَّ ٱلَّذِينَ يَخۡشَوۡنَ رَبَّهُم بِٱلۡغَيۡبِ لَهُم مَّغۡفِرَةٞ وَأَجۡرٞ كَبِيرٞ ١٢

13. ನೀವು ನಿಮ್ಮ ಮಾತನ್ನು ರಹಸ್ಯವಾಗಿರಿಸಿರಿ ಅಥವಾ ಬಹಿರಂಗಪಡಿಸಿರಿ. ನಿಶ್ಚಯವಾಗಿಯೂ ಅವನು ಹೃದಯಗಳೊಳಲ್ಲಿರುವುದನ್ನು ತಿಳಿಯುತ್ತಾನೆ.

وَأَسِرُّواْ قَوۡلَكُمۡ أَوِ ٱجۡهَرُواْ بِهِۦٓۖ إِنَّهُۥ عَلِيمُۢ بِذَاتِ ٱلصُّدُورِ ١٣

14. ಸೃಷ್ಟಿಸಿದವನಿಗೆ ಅದು ತಿಳಿದಿಲ್ಲವೇ? ಅವನು ಅತ್ಯಂತ ನವಿರು ಮತ್ತು ಸೂಕ್ಷ್ಮಜ್ಞಾನಿಯಾಗಿದ್ದಾನೆ.

أَلَا يَعۡلَمُ مَنۡ خَلَقَ وَهُوَ ٱللَّطِيفُ ٱلۡخَبِيرُ ١٤

15. ಅವನೇ ನಿಮಗೆ ಭೂಮಿಯನ್ನು ವಿಧೇಯಗೊಳಿಸಿಕೊಟ್ಟವನು. ನೀವು ಅದರ ರಸ್ತೆಗಳಲ್ಲಿ ಚಲಿಸುವುದಕ್ಕಾಗಿ. ಅವನು ಒದಗಿಸಿದ ಉಪಜೀವನದಿಂದ ತಿನ್ನಿರಿ. ಪುನರುತ್ಥಾನವು ಅವನ ಬಳಿಗೇ ಆಗಿದೆ.

هُوَ ٱلَّذِي جَعَلَ لَكُمُ ٱلۡأَرۡضَ ذَلُولٗا فَٱمۡشُواْ فِي مَنَاكِبِهَا وَكُلُواْ مِن رِّزۡقِهِۦۖ وَإِلَيۡهِ ٱلنُّشُورُ ١٥

16. ಆಕಾಶದಲ್ಲಿರುವವನು (ಅಲ್ಲಾಹು) ನಿಮ್ಮನ್ನು ಭೂಮಿಯಲ್ಲಿ ಹುದುಗಿಸಲಾರನೆಂದು ನೀವು ನಿರ್ಭಯವಾಗಿದ್ದೀರಾ? ಆಗ ಅಗೋ ಭೂಮಿ ಓಲಾಡುತ್ತಿರುವುದು.

ءَأَمِنتُم مَّن فِي ٱلسَّمَآءِ أَن يَخۡسِفَ بِكُمُ ٱلۡأَرۡضَ فَإِذَا هِيَ تَمُورُ ١٦

17. ಅಥವಾ ಆಕಾಶದಲ್ಲಿರುವವನು (ಅಲ್ಲಾಹು) ನಿಮ್ಮ ಮೇಲೆ ಕಲ್ಲಿನ ಮಳೆ ಸುರಿಸಲಾರನೆಂದು ನೀವು ನಿರ್ಭಯವಾಗಿದ್ದೀರಾ? ನಂತರ ನನ್ನ ಎಚ್ಚರಿಕೆ ಹೇಗಿತ್ತೆಂದು ನೀವು ಸದ್ಯವೇ ತಿಳಿದುಕೊಳ್ಳುವಿರಿ.

أَمۡ أَمِنتُم مَّن فِي ٱلسَّمَآءِ أَن يُرۡسِلَ عَلَيۡكُمۡ حَاصِبٗاۖ فَسَتَعۡلَمُونَ كَيۡفَ نَذِيرِ ١٧

18. ಅವರಿಗಿಂತ ಮೊದಲಿನವರೂ ನಿಷೇಧಿಸಿದ್ದರು. ಆಗ ಅವರ ಮೇಲೆ ನನ್ನ ಶಿಕ್ಷೆ ಹೇಗಿತ್ತು?

وَلَقَدۡ كَذَّبَ ٱلَّذِينَ مِن قَبۡلِهِمۡ فَكَيۡفَ كَانَ نَكِيرِ ١٨

| | |
|---|---|
| 19. ಅವರು ತಮ್ಮ ಮೇಲ್ಭಾಗದಲ್ಲಿ ರೆಕ್ಕೆಗಳನ್ನು ಚಾಚಿ ಹಾರಾಡುವ ಮತ್ತು ರೆಕ್ಕೆಗಳನ್ನು ಮಡಚುವ ಹಕ್ಕಿಗಳನ್ನು ನೋಡಿಲ್ಲವೇ? ಅವುಗಳನ್ನು ಪರಮ ದಯಾಳುವಾದ ಅಲ್ಲಾಹನಲ್ಲದೆ ಇನ್ನಾರೂ ಆಧರಿಸಿ ಹಿಡಿದಿಲ್ಲ. ನಿಶ್ಚಯವಾಗಿಯೂ ಅವನು ಎಲ್ಲವನ್ನೂ ನೋಡುತ್ತಿದ್ದಾನೆ. | أَوَلَمْ يَرَوْاْ إِلَى ٱلطَّيْرِ فَوْقَهُمْ صَٰٓفَّٰتٍ وَيَقْبِضْنَۚ مَا يُمْسِكُهُنَّ إِلَّا ٱلرَّحْمَٰنُۚ إِنَّهُۥ بِكُلِّ شَيْءِۭ بَصِيرٌ ﴿١٩﴾ |
| 20. ಪರಮ ದಯಾಳುವಾದ ಅಲ್ಲಾಹನ ಹೊರತು ನಿಮಗೆ ಸಹಾಯ ಮಾಡಬಹುದಾದ ಸೈನ್ಯವು ಯಾವುದು? ಸತ್ಯನಿಷೇಧಿಗಳು ಸಂಪೂರ್ಣ ವಂಚನೆಯಲ್ಲಿದ್ದಾರೆ. | أَمَّنْ هَٰذَا ٱلَّذِى هُوَ جُندٌ لَّكُمْ يَنصُرُكُم مِّن دُونِ ٱلرَّحْمَٰنِۚ إِنِ ٱلْكَٰفِرُونَ إِلَّا فِى غُرُورٍ ﴿٢٠﴾ |
| 21. ಅಲ್ಲಾಹು ನಿಮಗೆ ಉಪಜೀವನವನ್ನು ತಡೆಹಿಡಿದರೆ, ನಿಮಗೆ ಉಪಜೀವನ ನೀಡಲು ಯಾರಿಗೆ ಸಾಧ್ಯವಿದೆ? ಅಲ್ಲ, ವಾಸ್ತವವಾಗಿ (ಸತ್ಯನಿಷೇಧಿಗಳು) ಸೊಕ್ಕು ಮತ್ತು ವಿದ್ವೇಷದಲ್ಲೇ ನಿರತರಾಗಿದ್ದಾರೆ. | أَمَّنْ هَٰذَا ٱلَّذِى يَرْزُقُكُمْ إِنْ أَمْسَكَ رِزْقَهُۥۚ بَل لَّجُّواْ فِى عُتُوٍّ وَنُفُورٍ ﴿٢١﴾ |
| 22. ಹಾಗಾದರೆ ಹೆಚ್ಚು ಸನ್ಮಾರ್ಗದಲ್ಲಿರುವವನು ತಲೆಕೆಳಗಾಗಿ ಮುಖದ ಮೇಲೆ ನಡೆಯುವವನೋ, ಅಥವಾ (ಕಾಲುಗಳ ಮೇಲೆ) ನೇರ ಮಾರ್ಗದಲ್ಲಿ ಸರಿಯಾಗಿ ನಡೆಯುವವನೋ? | أَفَمَن يَمْشِى مُكِبًّا عَلَىٰ وَجْهِهِۦٓ أَهْدَىٰٓ أَمَّن يَمْشِى سَوِيًّا عَلَىٰ صِرَٰطٍ مُّسْتَقِيمٍ ﴿٢٢﴾ |
| 23. ಹೇಳಿರಿ: "ಅವನೇ ನಿಮ್ಮನ್ನು ಸೃಷ್ಟಿಸಿದವನು ಮತ್ತು ನಿಮಗೆ ಶ್ರವಣ, ದೃಷ್ಟಿ ಹಾಗೂ ಹೃದಯವನ್ನು ನೀಡಿದವನು. ನೀವು ಸ್ವಲ್ಪ ಮಾತ್ರ ಕೃತಜ್ಞರಾಗುತ್ತೀರಿ." | قُلْ هُوَ ٱلَّذِىٓ أَنشَأَكُمْ وَجَعَلَ لَكُمُ ٱلسَّمْعَ وَٱلْأَبْصَٰرَ وَٱلْأَفْـِٔدَةَۖ قَلِيلًا مَّا تَشْكُرُونَ ﴿٢٣﴾ |
| 24. ಹೇಳಿರಿ: "ಅವನೇ ನಿಮ್ಮನ್ನು ಭೂಮಿಯಲ್ಲಿ ಸೃಷ್ಟಿಸಿದವನು. ನಿಮ್ಮನ್ನು ಅವನ ಬಳಿಯಲ್ಲೇ ಒಟ್ಟುಗೂಡಿಸಲಾಗುವುದು." | قُلْ هُوَ ٱلَّذِى ذَرَأَكُمْ فِى ٱلْأَرْضِ وَإِلَيْهِ تُحْشَرُونَ ﴿٢٤﴾ |
| 25. ಅವರು ಕೇಳುತ್ತಾರೆ: "ಈ ವಾಗ್ದಾನವು ಸತ್ಯವಾಗುವುದು ಯಾವಾಗ? ನೀವು ಸತ್ಯವಂತರಾಗಿದ್ದರೆ (ಹೇಳಿರಿ)." | وَيَقُولُونَ مَتَىٰ هَٰذَا ٱلْوَعْدُ إِن كُنتُمْ صَٰدِقِينَ ﴿٢٥﴾ |
| 26. ಹೇಳಿರಿ: "ಆ ಜ್ಞಾನವಿರುವುದು ಅಲ್ಲಾಹನಿಗೆ ಮಾತ್ರ. ನಿಶ್ಚಯವಾಗಿಯೂ ನಾನೊಬ್ಬ ಸ್ಪಷ್ಟ ಮುನ್ನೆಚ್ಚರಿಕೆಗಾರ ಮಾತ್ರವಾಗಿದ್ದೇನೆ." | قُلْ إِنَّمَا ٱلْعِلْمُ عِندَ ٱللَّهِ وَإِنَّمَآ أَنَا۠ نَذِيرٌ مُّبِينٌ ﴿٢٦﴾ |
| 27. ಅವರು ಆ ವಾಗ್ದಾನವು ಸಮೀಪದಲ್ಲಿರುವುದನ್ನು ಕಾಣುವಾಗ, ಸತ್ಯನಿಷೇಧಿಗಳ ಮುಖಗಳು ಬಿಳಿಚಿಕೊಳ್ಳುವುದು. (ಅವರೊಡನೆ ಹೇಳಲಾಗುವುದು): "ಇದೇ ನೀವು ಬೇಡುತ್ತಿದ್ದ ಆ ಶಿಕ್ಷೆ." | فَلَمَّا رَأَوْهُ زُلْفَةً سِيٓـَٔتْ وُجُوهُ ٱلَّذِينَ كَفَرُواْ وَقِيلَ هَٰذَا ٱلَّذِى كُنتُم بِهِۦ تَدَّعُونَ ﴿٢٧﴾ |
| 28. ಹೇಳಿರಿ: "ನೀವು ಆಲೋಚಿಸಿ ನೋಡಿದ್ದೀರಾ! ಅಲ್ಲಾಹು ನನ್ನನ್ನು ಮತ್ತು ನನ್ನ ಅನುಯಾಯಿಗಳನ್ನು ನಾಶ ಮಾಡಿದರೆ, ಅಥವಾ ನಮಗೆ ದಯೆ ತೋರಿದರೆ, ಸತ್ಯನಿಷೇಧಿಗಳನ್ನು ಯಾತನಾಮಯ ಶಿಕ್ಷೆಯಿಂದ ಪಾರು ಮಾಡುವವರು ಯಾರು?" | قُلْ أَرَءَيْتُمْ إِنْ أَهْلَكَنِىَ ٱللَّهُ وَمَن مَّعِىَ أَوْ رَحِمَنَا فَمَن يُجِيرُ ٱلْكَٰفِرِينَ مِنْ عَذَابٍ أَلِيمٍ ﴿٢٨﴾ |

29. ಹೇಳಿರಿ: “ಅವನು ಪರಮ ದಯಾಳು. ನಾವು ಅವನಲ್ಲಿ ವಿಶ್ವಾಸ-ವಿಟ್ಟಿದ್ದೇವೆ ಮತ್ತು ಅವನಲ್ಲಿ ಭರವಸೆಯಿಟ್ಟಿದ್ದೇವೆ. ಸ್ಪಷ್ಟ ದುರ್ಮಾ-ರ್ಗದಲ್ಲಿರುವುದು ಯಾರೆಂದು ನೀವು ಸದ್ಯವೇ ತಿಳಿಯುವಿರಿ.”

قُلْ هُوَ ٱلرَّحْمَٰنُ ءَامَنَّا بِهِۦ وَعَلَيْهِ تَوَكَّلْنَا ۖ فَسَتَعْلَمُونَ مَنْ هُوَ فِى ضَلَٰلٍ مُّبِينٍ ﴿٢٩﴾

30. ಹೇಳಿರಿ: “ನೀವು ಆಲೋಚಿಸಿ ನೋಡಿದ್ದೀರಾ! ನಿಮ್ಮ ನೀರು ಭೂಮಿಯಲ್ಲಿ ಆಳಕ್ಕೆ ಇಂಗಿದರೆ, ನಿಮಗೆ ಹರಿಯುವ ನೀರನ್ನು ತಂದುಕೊಡುವವನು ಯಾರು?”

قُلْ أَرَءَيْتُمْ إِنْ أَصْبَحَ مَآؤُكُمْ غَوْرًا فَمَن يَأْتِيكُم بِمَآءٍ مَّعِينٍ ﴿٣٠﴾

# 68. ಅಲ್-ಕಲಮ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسْمِ ٱللَّهِ ٱلرَّحْمَٰنِ ٱلرَّحِيمِ

1. ನೂನ್. ಲೇಖನಿ ಮತ್ತು ಅವರು (ದೇವದೂತರುಗಳು) ಬರೆಯುವುದರ ಮೇಲಾಣೆ!

نٓ ۚ وَٱلْقَلَمِ وَمَا يَسْطُرُونَ ﴿١﴾

2. ನಿಮ್ಮ ಪರಿಪಾಲಕನ (ಅಲ್ಲಾಹನ) ಅನುಗ್ರಹದಿಂದಾಗಿ ನೀವು ಮಾನಸಿಕ ಅಸ್ವಸ್ಥರಲ್ಲ.

مَآ أَنتَ بِنِعْمَةِ رَبِّكَ بِمَجْنُونٍ ﴿٢﴾

3. ನಿಶ್ಚಯವಾಗಿಯೂ ನಿಮಗೆ ಎಂದೂ ಮುಗಿಯದ ಪ್ರತಿಫಲವಿದೆ.

وَإِنَّ لَكَ لَأَجْرًا غَيْرَ مَمْنُونٍ ﴿٣﴾

4. ನಿಶ್ಚಯವಾಗಿಯೂ ನೀವು ಶ್ರೇಷ್ಠ ಗುಣ ನಡವಳಿಕೆಯಲ್ಲಿದ್ದೀರಿ.

وَإِنَّكَ لَعَلَىٰ خُلُقٍ عَظِيمٍ ﴿٤﴾

5. ಆದ್ದರಿಂದ ನೀವು ನೋಡುವಿರಿ ಮತ್ತು ಅವರು ಕೂಡ ನೋಡುವರು.

فَسَتُبْصِرُ وَيُبْصِرُونَ ﴿٥﴾

6. ನಿಮ್ಮಲ್ಲಿ ಕ್ಷೋಭೆಗೆ ಬಲಿಯಾದವರು ಯಾರೆಂದು.

بِأَييِّكُمُ ٱلْمَفْتُونُ ﴿٦﴾

7. ನಿಶ್ಚಯವಾಗಿಯೂ ತನ್ನ ಮಾರ್ಗದಿಂದ ತಪ್ಪಿಹೋದವರ ಬಗ್ಗೆ ನಿಮ್ಮ ಪರಿಪಾಲಕನಿಗೆ (ಅಲ್ಲಾಹನಿಗೆ) ಬಹಳ ಚೆನ್ನಾಗಿ ತಿಳಿದಿದೆ. ಸನ್ಮಾರ್ಗ ಪಡೆದವರ ಬಗ್ಗೆಯೂ ಅವನಿಗೆ ಬಹಳ ಚೆನ್ನಾಗಿ ತಿಳಿದಿದೆ.

إِنَّ رَبَّكَ هُوَ أَعْلَمُ بِمَن ضَلَّ عَن سَبِيلِهِۦ وَهُوَ أَعْلَمُ بِٱلْمُهْتَدِينَ ﴿٧﴾

8. ಆದ್ದರಿಂದ ನೀವು ಸತ್ಯನಿಷೇಧಿಗಳ ಮಾತನ್ನು ಕೇಳಬೇಡಿ.

فَلَا تُطِعِ ٱلْمُكَذِّبِينَ ﴿٨﴾

9. ನೀವು ಸ್ವಲ್ಪ ಮೃದುವಾದರೆ ಅವರು ಕೂಡ ಮೃದುವಾಗುತ್ತಾರೆ ಎಂದು ಅವರು ಬಯಸುತ್ತಾರೆ.[1]

وَدُّوا۟ لَوْ تُدْهِنُ فَيُدْهِنُونَ ﴿٩﴾

10. ನೀವು ಎಲ್ಲಾ ಪದೇ ಪದೇ ಆಣೆ ಮಾಡುವ ನೀಚರ ಮಾತನ್ನು ಕೇಳಬೇಡಿ.

وَلَا تُطِعْ كُلَّ حَلَّافٍ مَّهِينٍ ﴿١٠﴾

[1] ಅಂದರೆ ಅವರ ದೇವರುಗಳ ವಿಷಯದಲ್ಲಿ ನೀವು ಮೃದು ನಿಲುವನ್ನು ತಳೆದರೆ ಅವರು ಕೂಡ ನಿಮ್ಮ ಬಗ್ಗೆ ಮೃದು ನಿಲುವನ್ನು ತಳೆಯುತ್ತಾರೆ.

| | | |
|---|---|---|
| 11. | (ಅಂದರೆ) ಚುಚ್ಚಿ ಮಾತನಾಡುವವನು ಮತ್ತು ಚಾಡಿಯೊಂದಿಗೆ ನಡೆಯುವವನು. | هَمَّازٖ مَّشَّآءِۭ بِنَمِيمٖ ١١ |
| 12. | ಒಳಿತಿಗೆ ಅಡ್ಡಿಪಡಿಸುವವನು, ಎಲ್ಲೆ ಮೀರಿದವನು ಮತ್ತು ಕಡುಪಾಪಿಯಾಗಿರುವವನು. | مَّنَّاعٖ لِّلۡخَيۡرِ مُعۡتَدٍ أَثِيمٍ ١٢ |
| 13. | ಒರಟನು, ಮಾತ್ರವಲ್ಲದೆ ಕುಲಕ್ಕೆ ಸೇರದವನು.[1] | عُتُلِّۭ بَعۡدَ ذَٰلِكَ زَنِيمٍ ١٣ |
| 14. | ಅವನಿಗೆ ಆಸ್ತಿ ಮತ್ತು ಗಂಡು ಮಕ್ಕಳಿರುವುದೇ ಅವನ (ಈ ದುರ್ನಡತೆಗೆ) ಕಾರಣವಾಗಿದೆ. | أَن كَانَ ذَا مَالٖ وَبَنِينَ ١٤ |
| 15. | ಅವನಿಗೆ ನಮ್ಮ ವಚನಗಳನ್ನು ಓದಿಕೊಡಲಾದರೆ, ಅದನ್ನು ಪ್ರಾಚೀನ ಕಾಲದವರ ಪುರಾಣಗಳು ಎಂದು ಹೇಳುತ್ತಾನೆ. | إِذَا تُتۡلَىٰ عَلَيۡهِ ءَايَٰتُنَا قَالَ أَسَٰطِيرُ ٱلۡأَوَّلِينَ ١٥ |
| 16. | ನಾವು ಅವನ ಮೂಗಿನ ಮೇಲೆ ಬರೆ ಹಾಕುವೆವು. | سَنَسِمُهُۥ عَلَى ٱلۡخُرۡطُومِ ١٦ |
| 17. | ನಿಶ್ಚಯವಾಗಿಯೂ ಆ ತೋಟದ ಜನರನ್ನು ಪರೀಕ್ಷಿಸಿದಂತೆ ನಾವು ಅವರನ್ನೂ ಪರೀಕ್ಷಿಸಿದೆವು. ಬೆಳಗಾಗುತ್ತಿದ್ದಂತೆ ತೋಟದ ಹಣ್ಣುಗಳನ್ನು ನಾವು ಖಂಡಿತ ಕೊಯ್ಯುವೆವು ಎಂದು ಅವರು ಆಣೆ ಮಾಡಿ ಹೇಳಿದ ಸಂದರ್ಭ. | إِنَّا بَلَوۡنَٰهُمۡ كَمَا بَلَوۡنَآ أَصۡحَٰبَ ٱلۡجَنَّةِ إِذۡ أَقۡسَمُواْ لَيَصۡرِمُنَّهَا مُصۡبِحِينَ ١٧ |
| 18. | ಆದರೆ ಅವರು ಇನ್‌ಶಾ ಅಲ್ಲಾಹ್ (ಅಲ್ಲಾಹು ಇಚ್ಛಿಸಿದರೆ) ಎಂದು ಹೇಳಲಿಲ್ಲ. | وَلَا يَسۡتَثۡنُونَ ١٨ |
| 19. | ಆದ್ದರಿಂದ, ಅವರು ನಿದ್ದೆಯಲ್ಲಿದ್ದಾಗಲೇ (ರಾತ್ರೋರಾತ್ರಿ) ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಯ ಒಂದು ಶಿಕ್ಷೆಯು ಆ ತೋಟವನ್ನು ನಾಲ್ಕೂ ಕಡೆಯಿಂದ ಸುತ್ತಿತು. | فَطَافَ عَلَيۡهَا طَآئِفٞ مِّن رَّبِّكَ وَهُمۡ نَآئِمُونَ ١٩ |
| 20. | ಆಗ ಆ ತೋಟವು ಕಟಾವು ಮಾಡಿದ ಹೊಲದಂತಾಯಿತು. | فَأَصۡبَحَتۡ كَٱلصَّرِيمِ ٢٠ |
| 21. | ಬೆಳಗಾಗುತ್ತಿದ್ದಂತೆ ಅವರು ಒಬ್ಬರನ್ನೊಬ್ಬರು ಕೂಗಿ ಕರೆದು ಹೇಳಿದರು: | فَتَنَادَوۡاْ مُصۡبِحِينَ ٢١ |
| 22. | “ನಿಮಗೆ ಹಣ್ಣು ಕೊಯ್ಯಬೇಕೆಂದಿದ್ದರೆ ಬೆಳಿಗ್ಗೆಯೇ ನಿಮ್ಮ ತೋಟಕ್ಕೆ ಹೊರಡಿ.” | أَنِ ٱغۡدُواْ عَلَىٰ حَرۡثِكُمۡ إِن كُنتُمۡ صَٰرِمِينَ ٢٢ |
| 23. | ನಂತರ ಅವರು ಪರಸ್ಪರ ಗುಟ್ಟಾಗಿ ಈ ಮಾತುಗಳನ್ನು ಹೇಳುತ್ತಾ ಹೊರಟರು: | فَٱنطَلَقُواْ وَهُمۡ يَتَخَٰفَتُونَ ٢٣ |
| 24. | “ಇಂದು ನಿಮ್ಮ ಬಳಿಗೆ ಯಾವುದೇ ಬಡವ | أَن لَّا يَدۡخُلَنَّهَا ٱلۡيَوۡمَ عَلَيۡكُم مِّسۡكِينٞ ٢٤ |

[1] ಇವೆಲ್ಲವೂ ಮಕ್ಕಾದ ಸತ್ಯನಿಷೇಧಿಗಳ, ವಿಶೇಷವಾಗಿ ಅವರ ಮುಖಂಡ ವಲೀದ್ ಬಿನ್ ಮುಗೀರ ವಿಷಯದಲ್ಲಿ ಅವತೀರ್ಣವಾದ ವಚನಗಳಾಗಿವೆ. ಇದು ಇಂತಹ ದುರ್ಗುಣಗಳನ್ನು ಹೊಂದಿರುವ ಎಲ್ಲರಿಗೂ ಅನ್ವಯವಾಗುತ್ತದೆ.

ಬರುವಂತಾಗಬಾರದು."

25. ಅವರು ಒಂದು ನಿರ್ಧಾರದೊಂದಿಗೆ (ಅದನ್ನು ಜಾರಿಗೊಳಿಸುವ) ಪೂರ್ಣ ಸಾಮರ್ಥ್ಯವಿದೆಯೆಂದು ಪರಿಗಣಿಸಿ ಬೆಳಗ್ಗೆಯೇ ಹೊರಟರು. | وَغَدَوۡاْ عَلَىٰ حَرۡدٖ قَٰدِرِينَ ٢٥

26. ಆದರೆ ಅವರು ಆ ತೋಟವನ್ನು ನೋಡಿದಾಗ ಅವರು ಹೇಳಿದರು: "ನಿಶ್ಚಯವಾಗಿಯೂ ನಮಗೆ ದಾರಿ ತಪ್ಪಿದೆ. | فَلَمَّا رَأَوۡهَا قَالُوٓاْ إِنَّا لَضَآلُّونَ ٢٦

27. ಅಲ್ಲ, ನಮಗೆ ಅದೃಷ್ಟ ಕೈಕೊಟ್ಟಿದೆ." | بَلۡ نَحۡنُ مَحۡرُومُونَ ٢٧

28. ಅವರಲ್ಲಿದ್ದ ಉತ್ತಮ ವ್ಯಕ್ತಿ ಹೇಳಿದನು: "ನೀವೇಕೆ ಅಲ್ಲಾಹನ ಪರಿಶುದ್ಧಿಯನ್ನು ಕೊಂಡಾಡುವುದಿಲ್ಲ ಎಂದು ನಾನು ನಿಮ್ಮೊಡನೆ ಕೇಳಲಿಲ್ಲವೇ?" | قَالَ أَوۡسَطُهُمۡ أَلَمۡ أَقُل لَّكُمۡ لَوۡلَا تُسَبِّحُونَ ٢٨

29. ಅವರು ಹೇಳಿದರು: "ನಮ್ಮ ಪರಿಪಾಲಕನ (ಅಲ್ಲಾಹನ) ಪರಿಶುದ್ಧಿಯನ್ನು ನಾವು ಕೊಂಡಾಡುತ್ತೇವೆ. ನಿಶ್ಚಯವಾಗಿಯೂ ನಾವು ಅಕ್ರಮಿಗಳಾಗಿದ್ದೇವೆ." | قَالُواْ سُبۡحَٰنَ رَبِّنَآ إِنَّا كُنَّا ظَٰلِمِينَ ٢٩

30. ನಂತರ ಅವರು ಒಬ್ಬರಿಗೊಬ್ಬರು ಮುಖ ಮಾಡಿ ಪರಸ್ಪರ ಆರೋಪ ಹೊರಿಸತೊಡಗಿದರು. | فَأَقۡبَلَ بَعۡضُهُمۡ عَلَىٰ بَعۡضٖ يَتَلَٰوَمُونَ ٣٠

31. ಅವರು ಹೇಳಿದರು: "ಓ ನಮ್ಮ ದುರ್ಗತಿಯೇ! ನಿಶ್ಚಯವಾಗಿಯೂ ನಾವು ಅತಿರೇಕಿಗಳಾಗಿದ್ದೆವು. | قَالُواْ يَٰوَيۡلَنَآ إِنَّا كُنَّا طَٰغِينَ ٣١

32. ನಮ್ಮ ಪರಿಪಾಲಕನು (ಅಲ್ಲಾಹು) ನಮಗೆ ಇದಕ್ಕಿಂತಲೂ ಉತ್ತಮವಾದುದನ್ನು ಬದಲಿಯಾಗಿ ನೀಡಬಹುದು. ನಿಶ್ಚಯವಾಗಿಯೂ ನಾವು ನಮ್ಮ ಪರಿಪಾಲಕನ (ಅಲ್ಲಾಹನ) ಬಗ್ಗೆ ಆಶಾವಾದಿಗಳಾಗಿದ್ದೇವೆ." | عَسَىٰ رَبُّنَآ أَن يُبۡدِلَنَا خَيۡرٗا مِّنۡهَآ إِنَّآ إِلَىٰ رَبِّنَا رَٰغِبُونَ ٣٢

33. ಶಿಕ್ಷೆಯು ಹೀಗೆಯೇ ಆಗಿದೆ. ಪರಲೋಕದ ಶಿಕ್ಷೆಯು ಅತಿದೊಡ್ಡದಾಗಿದೆ. ಅವರು ಅದನ್ನು ತಿಳಿಯುತ್ತಿದ್ದರೆ! | كَذَٰلِكَ ٱلۡعَذَابُۖ وَلَعَذَابُ ٱلۡأٓخِرَةِ أَكۡبَرُۚ لَوۡ كَانُواْ يَعۡلَمُونَ ٣٣

34. ನಿಶ್ಚಯವಾಗಿಯೂ, ದೇವಭಯವುಳ್ಳವರಿಗೆ ಅವರ ಪರಿಪಾಲಕನ (ಅಲ್ಲಾಹನ) ಬಳಿ ಸುಖಾಡಂಬರಗಳಿಂದ ಕೂಡಿದ ಸ್ವರ್ಗೋದ್ಯಾನಗಳಿವೆ. | إِنَّ لِلۡمُتَّقِينَ عِندَ رَبِّهِمۡ جَنَّٰتِ ٱلنَّعِيمِ ٣٤

35. ಹಾಗಾದರೆ ನಾವು ಮುಸ್ಲಿಮರನ್ನು ಅಪರಾಧಿಗಳಂತೆ ನಡೆಸಿಕೊಳ್ಳುವೆವೇ? | أَفَنَجۡعَلُ ٱلۡمُسۡلِمِينَ كَٱلۡمُجۡرِمِينَ ٣٥

36. ನಿಮಗೇನಾಗಿದೆ? ನೀವು ಹೇಗೆ ತೀರ್ಪು ನೀಡುತ್ತೀರಿ? | مَا لَكُمۡ كَيۡفَ تَحۡكُمُونَ ٣٦

37. ನಿಮ್ಮಲ್ಲಿ ಒಂದು ಗ್ರಂಥವಿದ್ದು ನೀವು ಅದರಿಂದ ಓದುತ್ತಿದ್ದೀರಾ?

أَمۡ لَكُمۡ كِتَٰبٌ فِيهِ تَدۡرُسُونَ ٣٧

38. ಅದರಲ್ಲಿ ನಿಮ್ಮ ಮನಸ್ಸಿಗೆ ಒಪ್ಪಿಗೆಯಾಗುವ ವಿಷಯಗಳಿವೆಯೇ?

إِنَّ لَكُمۡ فِيهِ لَمَا تَخَيَّرُونَ ٣٨

39. ಅಥವಾ, ನೀವು ಸ್ವಯಂ ನಿಶ್ಚಯಿಸುವುದೆಲ್ಲವೂ ನಿಮಗಿದೆಯೆಂದು ಪುನರುತ್ಥಾನ ದಿನದ ತನಕ ತಲುಪುವ ಯಾವುದಾದರೂ ಪ್ರತಿಜ್ಞೆಗಳನ್ನು ನೀವು ನಮ್ಮಿಂದ ಪಡೆದಿದ್ದೀರಾ?

أَمۡ لَكُمۡ أَيۡمَٰنٌ عَلَيۡنَا بَٰلِغَةٌ إِلَىٰ يَوۡمِ ٱلۡقِيَٰمَةِ إِنَّ لَكُمۡ لَمَا تَحۡكُمُونَ ٣٩

40. ಅವರಲ್ಲಿ ಯಾರು ಇದರ ಹೊಣೆಯನ್ನು ವಹಿಸಿಕೊಳ್ಳುತ್ತಾರೆಂದು ಅವರೊಡನೆ ಕೇಳಿರಿ.

سَلۡهُمۡ أَيُّهُم بِذَٰلِكَ زَعِيمٌ ٤٠

41. ಅವರಿಗೆ ಯಾರಾದರೂ ಸಹಭಾಗಿಗಳು ಇದ್ದಾರೆಯೇ? ಅವರು ಸತ್ಯವಂತರಾಗಿದ್ದರೆ ಅವರ ಸಹಭಾಗಿಗಳನ್ನು ಕರೆದುಕೊಂಡು ಬರಲಿ.

أَمۡ لَهُمۡ شُرَكَآءُ فَلۡيَأۡتُواْ بِشُرَكَآئِهِمۡ إِن كَانُواْ صَٰدِقِينَ ٤١

42. ಕಣಕಾಲನ್ನು ಪ್ರದರ್ಶಿಸಲಾಗುವ ದಿನ. ಆಗ ಅವರನ್ನು ಸಾಷ್ಟಾಂಗ ಮಾಡಲು ಕರೆಯಲಾಗುವುದು. ಆದರೆ ಅವರಿಗೆ (ಸಾಷ್ಟಾಂಗ ಮಾಡಲು) ಸಾಧ್ಯವಾಗುವುದಿಲ್ಲ.[1]

يَوۡمَ يُكۡشَفُ عَن سَاقٖ وَيُدۡعَوۡنَ إِلَى ٱلسُّجُودِ فَلَا يَسۡتَطِيعُونَ ٤٢

43. ಅವರ ಕಣ್ಣುಗಳು ತಗ್ಗಿಕೊಂಡಿರುವುವು ಮತ್ತು ಅವಮಾನವು ಅವರನ್ನು ಆವರಿಸಿಕೊಂಡಿರುವುದು. ವಾಸ್ತವದಲ್ಲಿ ಅವರು ಇಹಲೋಕದಲ್ಲಿ ಸುಸ್ಥಿತಿಯಲ್ಲಿದ್ದಾಗಲೂ ಅವರನ್ನು ಸಾಷ್ಟಾಂಗ ಮಾಡಲು ಕರೆಯಲಾಗುತ್ತಿತ್ತು.

خَٰشِعَةً أَبۡصَٰرُهُمۡ تَرۡهَقُهُمۡ ذِلَّةٞۖ وَقَدۡ كَانُواْ يُدۡعَوۡنَ إِلَى ٱلسُّجُودِ وَهُمۡ سَٰلِمُونَ ٤٣

44. ಆದ್ದರಿಂದ ನನ್ನನ್ನು ಮತ್ತು ಈ ಮಾತನ್ನು (ಕುರ್‌ಆನನ್ನು) ನಿಷೇಧಿ-ಸುವವನನ್ನು ಬಿಟ್ಟುಬಿಡಿ.[2] ಅವರು ತಿಳಿಯದ ರೀತಿಯಲ್ಲಿ ನಾವು ಅವರನ್ನು ಹಂತ ಹಂತವಾಗಿ ಹಿಡಿಯುವೆವು.

فَذَرۡنِي وَمَن يُكَذِّبُ بِهَٰذَا ٱلۡحَدِيثِۖ سَنَسۡتَدۡرِجُهُم مِّنۡ حَيۡثُ لَا يَعۡلَمُونَ ٤٤

45. ನಾನು ಅವರಿಗೆ ಕಾಲಾವಕಾಶ ನೀಡುವೆನು. ನಿಶ್ಚಯವಾಗಿಯೂ ನನ್ನ ತಂತ್ರವು ಬಲಿಷ್ಠವಾಗಿದೆ.

وَأُمۡلِي لَهُمۡۚ إِنَّ كَيۡدِي مَتِينٌ ٤٥

46. ನೀವು ಅವರೊಡನೆ ಪ್ರತಿಫಲವನ್ನು ಕೇಳಿ ಅವರು (ಅದನ್ನು ನೀಡಲು ಸಾಧ್ಯವಾಗದೆ) ಸಾಲದ ಹೊರೆಯನ್ನು ಹೊರುತ್ತಿದ್ದಾರೆಯೇ?

أَمۡ تَسۡـَٔلُهُمۡ أَجۡرٗا فَهُم مِّن مَّغۡرَمٖ مُّثۡقَلُونَ ٤٦

47. ಅವರ ಬಳಿ ಅದೃಶ್ಯ ಜ್ಞಾನವಿದ್ದು ಅವರು ಅದನ್ನು

أَمۡ عِندَهُمُ ٱلۡغَيۡبُ فَهُمۡ يَكۡتُبُونَ ٤٧

---

[1] ಪುನರುತ್ಥಾನದ ದಿನ ಅಲ್ಲಾಹು ತನ್ನ ಮಹತ್ವಕ್ಕೆ ಹೊಂದಿಕೆಯಾಗುವ ವಿಧದಲ್ಲಿ ತನ್ನ ಕಣಕಾಲನ್ನು ಪ್ರದರ್ಶಿಸುತ್ತಾನೆ. ಆಗ ಸತ್ಯವಿಶ್ವಾಸಿಗಳಾದ ಪುರುಷರು ಮತ್ತು ಮಹಿಳೆಯರೆಲ್ಲರೂ ಅವನ ಮುಂದೆ ಸಾಷ್ಟಾಂಗ ಮಾಡುತ್ತಾರೆ. ಆದರೆ ಇಹಲೋಕದಲ್ಲಿ ತೋರಿಕೆಗಾಗಿ ಮತ್ತು ಜನಮನ್ನ-ಣೆಗಾಗಿ ಸಾಷ್ಟಾಂಗ ಮಾಡುತ್ತಿದ್ದವರಿಗೆ ಅದು ಸಾಧ್ಯವಾಗವುದಿಲ್ಲ.

[2] ಅಂದರೆ ಅವರ ವಿಷಯವನ್ನು ನಾನು ನೋಡಿಕೊಳ್ಳುತ್ತೇನೆ.

ಬರೆಯುತ್ತಿದ್ದಾರೆಯೇ?

48. ಆದ್ದರಿಂದ, ನಿಮ್ಮ ಪರಿಪಾಲಕನ (ಅಲ್ಲಾಹನ) ತೀರ್ಮಾನಕ್ಕಾಗಿ ತಾಳ್ಮೆಯಿಂದಿರಿ. ನೀವು ಮೀನಿನ ಸಂಗಡಿಗನಂತೆ (ಯೂನುಸರಂತೆ) ಆಗಬೇಡಿ. ತೀವ್ರ ದುಃಖಿತನಾಗಿದ್ದ ಸ್ಥಿತಿಯಲ್ಲಿ ಅವರು ಕರೆದು ಪ್ರಾರ್ಥಿಸಿದ ಸಂದರ್ಭ.

فَٱصۡبِرۡ لِحُكۡمِ رَبِّكَ وَلَا تَكُن كَصَاحِبِ ٱلۡحُوتِ إِذۡ نَادَىٰ وَهُوَ مَكۡظُومٞ ٤٨

49. ಅವರ ಪರಿಪಾಲಕನ (ಅಲ್ಲಾಹನ) ಅನುಗ್ರಹವು ಅವರನ್ನು ತಲುಪದಿರುತ್ತಿದ್ದರೆ, ಅವರನ್ನು ಆಕ್ಷೇಪಿತ ಸ್ಥಿತಿಯಲ್ಲಿ ಬಯಲು ತೀರಕ್ಕೆ ಎಸೆಯಲಾಗುತ್ತಿತ್ತು.

لَّوۡلَآ أَن تَدَٰرَكَهُۥ نِعۡمَةٞ مِّن رَّبِّهِۦ لَنُبِذَ بِٱلۡعَرَآءِ وَهُوَ مَذۡمُومٞ ٤٩

50. ಅವರ ಪರಿಪಾಲಕ (ಅಲ್ಲಾಹು) ಅವರನ್ನು ಆರಿಸಿದನು ಮತ್ತು ಅವರನ್ನು ನೀತಿವಂತರಲ್ಲಿ ಸೇರಿಸಿದನು.

فَٱجۡتَبَٰهُ رَبُّهُۥ فَجَعَلَهُۥ مِنَ ٱلصَّٰلِحِينَ ٥٠

51. ಸತ್ಯನಿಷೇಧಿಗಳು ಈ ಉಪದೇಶವನ್ನು (ಕುರ್‌ಆನನ್ನು) ಕೇಳಿದಾಗ, ತಮ್ಮ ಕೆಟ್ಟದೃಷ್ಟಿಗಳಿಂದ ನಿಮ್ಮನ್ನು ಇನ್ನೇನು ಜಾರುವಂತೆ ಮಾಡುವುದರಲ್ಲಿದ್ದರು.[1] ಅವರು ಹೇಳುತ್ತಿದ್ದರು: "ನಿಶ್ಚಯವಾಗಿಯೂ ಅವನೊಬ್ಬ ಮಾನಸಿಕ ಅಸ್ವಸ್ಥ."

وَإِن يَكَادُ ٱلَّذِينَ كَفَرُواْ لَيُزۡلِقُونَكَ بِأَبۡصَٰرِهِمۡ لَمَّا سَمِعُواْ ٱلذِّكۡرَ وَيَقُولُونَ إِنَّهُۥ لَمَجۡنُونٞ ٥١

52. ಇದು (ಕುರ್‌ಆನ್) ಸರ್ವಲೋಕಗಳ ಜನರಿಗೆ ಒಂದು ಉಪದೇಶವಲ್ಲದೆ ಇನ್ನೇನೂ ಅಲ್ಲ.

وَمَا هُوَ إِلَّا ذِكۡرٞ لِّلۡعَٰلَمِينَ ٥٢

# 69. ಅಲ್-ಹಾಕ್ಕ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಸತ್ಯವಾಗಿ ಸಂಭವಿಸುವಂತದ್ದು.

ٱلۡحَآقَّةُ ١

2. ಸತ್ಯವಾಗಿ ಸಂಭವಿಸುವಂತದ್ದು ಏನು?

مَا ٱلۡحَآقَّةُ ٢

3. ಸತ್ಯವಾಗಿ ಸಂಭವಿಸುವಂತದ್ದು ಏನೆಂದು ನಿಮಗೇನು ಗೊತ್ತು?

وَمَآ أَدۡرَىٰكَ مَا ٱلۡحَآقَّةُ ٣

4. ಸಮೂದ್ ಮತ್ತು ಆದ್ ಗೋತ್ರದವರು ಆ ಭಯಾನಕ ಘಟನೆಯನ್ನು (ಪುನರುತ್ಥಾನವನ್ನು) ನಿಷೇಧಿಸಿದರು.

كَذَّبَتۡ ثَمُودُ وَعَادُۢ بِٱلۡقَارِعَةِ ٤

5. ಸಮೂದ್ ಗೋತ್ರದವರನ್ನು ಮಿತಿಮೀರಿದ (ಭಯಾನಕ ಸದ್ದಿನ) ಮೂಲಕ ನಾಶ ಮಾಡಲಾಯಿತು.

فَأَمَّا ثَمُودُ فَأُهۡلِكُواْ بِٱلطَّاغِيَةِ ٥

6. ಆದ್ ಗೋತ್ರದವರನ್ನು ಅತಿಶೀತ ಉಗ್ರ ಗಾಳಿಯ ಮೂಲಕ ನಾಶ

وَأَمَّا عَادٞ فَأُهۡلِكُواْ بِرِيحٖ صَرۡصَرٍ عَاتِيَةٖ ٦

[1] ಅಂದರೆ ನಿಮಗೆ ಅಲ್ಲಾಹನ ಸಂರಕ್ಷಣೆಯಿಲ್ಲದಿರುತ್ತಿದ್ದರೆ ನೀವು ಸತ್ಯನಿಷೇಧಿಗಳ ಕೆಟ್ಟದೃಷ್ಟಿಗೆ ಬಲಿಯಾಗುತ್ತಿದ್ದಿರಿ.

ಮಾಡಲಾಯಿತು.

7. ಅಲ್ಲಾಹು ಅದನ್ನು ಅವರ ಮೇಲೆ ಏಳು ರಾತ್ರಿಗಳು ಮತ್ತು ಎಂಟು ದಿನಗಳ ಕಾಲ ನಿರಂತರವಾಗಿ ಹೇರಿದನು; ನಂತರ ಆ ಜನರು—ಕುಸಿದು ಬಿದ್ದ ಖರ್ಜೂರ ಮರಗಳ ಕಾಂಡಗಳೋ ಎಂಬಂತೆ—ಬೋರಲು ಬಿದ್ದು ಸತ್ತಿರುವುದು ನಿಮಗೆ ಕಾಣಬಹುದು.

سَخَّرَهَا عَلَيۡهِمۡ سَبۡعَ لَيَالٖ وَثَمَٰنِيَةَ أَيَّامٍ حُسُومٗاۖ فَتَرَى ٱلۡقَوۡمَ فِيهَا صَرۡعَىٰ كَأَنَّهُمۡ أَعۡجَازُ نَخۡلٍ خَاوِيَةٖ ۝٧

8. ಅವರಲ್ಲಿ ಯಾರಾದರೂ ಬಾಕಿಯುಳಿದದ್ದನ್ನು ನೀವು ಕಂಡಿದ್ದೀರಾ?

فَهَلۡ تَرَىٰ لَهُم مِّنۢ بَاقِيَةٖ ۝٨

9. ಫರೋಹ, ಅವನಿಗಿಂತ ಮೊದಲಿನವರು ಮತ್ತು ಬುಡಮೇಲು-ಗೊಳಿಸಲಾದ ಊರಿನವರು ಪಾಪಗಳೊಂದಿಗೆ ಬಂದರು.

وَجَآءَ فِرۡعَوۡنُ وَمَن قَبۡلَهُۥ وَٱلۡمُؤۡتَفِكَٰتُ بِٱلۡخَاطِئَةِ ۝٩

10. ಅವರು ಅವರ ಪರಿಪಾಲಕನ (ಅಲ್ಲಾಹನ) ಸಂದೇಶವಾಹಕರಿಗೆ ಅವಿಧೇಯತೆ ತೋರಿದರು. ಆಗ ಅಲ್ಲಾಹು ಅವರನ್ನು ಕಠೋರವಾದ ಹಿಡಿತದಿಂದ ಹಿಡಿದನು.

فَعَصَوۡاْ رَسُولَ رَبِّهِمۡ فَأَخَذَهُمۡ أَخۡذَةٗ رَّابِيَةً ۝١٠

11. ನಿಶ್ಚಯವಾಗಿಯೂ ನೀರು ಎಲ್ಲೆ ಮೀರಿ ಹರಿದಾಗ ನಾವು ನಿಮ್ಮನ್ನು ನಾವೆಯಲ್ಲಿ ಹೊತ್ತೊಯ್ದೆವು.

إِنَّا لَمَّا طَغَا ٱلۡمَآءُ حَمَلۡنَٰكُمۡ فِي ٱلۡجَارِيَةِ ۝١١

12. ನಾವು ಅದನ್ನು ನಿಮಗೆ ಒಂದು ನೆನಪಾಗಿ ಮಾಡಲು ಮತ್ತು ಜಾಗೃತ ಕಿವಿಯು ಅದರ ಬಗ್ಗೆ ಜಾಗೃತವಾಗಿರಲು.

لِنَجۡعَلَهَا لَكُمۡ تَذۡكِرَةٗ وَتَعِيَهَآ أُذُنٞ وَٰعِيَةٞ ۝١٢

13. ಕಹಳೆಯಲ್ಲಿ ಒಂದು ಊದುವಿಕೆಯನ್ನು ಊದಲಾದಾಗ.

فَإِذَا نُفِخَ فِي ٱلصُّورِ نَفۡخَةٞ وَٰحِدَةٞ ۝١٣

14. ಭೂಮಿ ಮತ್ತು ಪರ್ವತಗಳನ್ನು ಎತ್ತಲಾಗುವುದು ಮತ್ತು ಅವೆರಡನ್ನು ಒಂದೇ ಹೊಡೆತಕ್ಕೆ ಪುಡಿಪುಡಿ ಮಾಡಲಾಗುವುದು.

وَحُمِلَتِ ٱلۡأَرۡضُ وَٱلۡجِبَالُ فَدُكَّتَا دَكَّةٗ وَٰحِدَةٗ ۝١٤

15. ಅಂದು ಆ ಸಂಭವಿಸುವಿಕೆಯು (ಪುನರುತ್ಥಾನವು) ಸಂಭವಿಸುವುದು.

فَيَوۡمَئِذٖ وَقَعَتِ ٱلۡوَاقِعَةُ ۝١٥

16. ಆಕಾಶವು ಇಬ್ಭಾಗವಾಗುವುದು ಮತ್ತು ಅಂದು ಅದು ಬಲಹೀನವಾಗಿರುವುದು.

وَٱنشَقَّتِ ٱلسَّمَآءُ فَهِيَ يَوۡمَئِذٖ وَاهِيَةٞ ۝١٦

17. ದೇವದೂತರುಗಳು ಅದರ ತುದಿಗಳಲ್ಲಿರುವರು. ಅಂದು ಅವರ ಮೇಲ್ಭಾಗದಲ್ಲಿ ಎಂಟು (ದೇವದೂತರು) ನಿಮ್ಮ ಪರಿಪಾಲಕನ (ಅಲ್ಲಾಹನ) ಸಿಂಹಾಸನವನ್ನು ಎತ್ತಿಕೊಂಡಿರುವರು.

وَٱلۡمَلَكُ عَلَىٰٓ أَرۡجَآئِهَاۚ وَيَحۡمِلُ عَرۡشَ رَبِّكَ فَوۡقَهُمۡ يَوۡمَئِذٖ ثَمَٰنِيَةٞ ۝١٧

18. ಅಂದು ನಿಮ್ಮೆಲ್ಲರನ್ನೂ ಪ್ರದರ್ಶಿಸಲಾಗುವುದು. ನಿಮ್ಮ ಯಾವುದೇ ರಹಸ್ಯಗಳು ರಹಸ್ಯವಾಗಿರುವುದಿಲ್ಲ.

يَوۡمَئِذٖ تُعۡرَضُونَ لَا تَخۡفَىٰ مِنكُمۡ خَافِيَةٞ ۝١٨

19. ಆದ್ದರಿಂದ ಯಾರಿಗೆ ಅವನ ಕರ್ಮಪುಸ್ತಕವನ್ನು ಬಲಗೈಯಲ್ಲಿ

فَأَمَّا مَنۡ أُوتِيَ كِتَٰبَهُۥ بِيَمِينِهِۦ فَيَقُولُ هَآؤُمُ

| | | |
|---|---|---|
| | ನೀಡಲಾಗುತ್ತದೋ ಅವನು ಹೇಳುವನು: “ಇಗೋ! ನನ್ನ ಕರ್ಮ-ಪುಸ್ತಕವನ್ನು ಓದಿರಿ! | ٱقۡرَءُواْ كِتَٰبِيَهۡ ١٩ |
| 20. | ನಿಶ್ಚಯವಾಗಿಯೂ, ನಾನು ನನ್ನ ವಿಚಾರಣೆಯನ್ನು ಎದುರಿಸಬೇ-ಕಾಗಿದೆಯೆಂದು ನನಗೆ ಪೂರ್ಣ ನಂಬಿಕೆಯಿತ್ತು.” | إِنِّي ظَنَنتُ أَنِّي مُلَٰقٍ حِسَابِيَهۡ ٢٠ |
| 21. | ಆದ್ದರಿಂದ ಅವನು ಸಂತೃಪ್ತ ಜೀವನದಲ್ಲಿರುವನು. | فَهُوَ فِي عِيشَةٖ رَّاضِيَةٖ ٢١ |
| 22. | ಉನ್ನತ ಸ್ವರ್ಗದಲ್ಲಿ. | فِي جَنَّةٍ عَالِيَةٖ ٢٢ |
| 23. | ಅದರ ಹಣ್ಣುಗಳು ಬಾಗಿಕೊಂಡಿರುವುವು. | قُطُوفُهَا دَانِيَةٞ ٢٣ |
| 24. | (ಅವರೊಡನೆ ಹೇಳಲಾಗುವುದು): “ಕಳೆದುಹೋದ ದಿನಗಳಲ್ಲಿ ನೀವು ಮುಂದಕ್ಕೆ ಕಳುಹಿಸಿದ ಸತ್ಕರ್ಮಗಳ ಕಾರಣದಿಂದ ಸಂತೋಷವಾಗಿ ತಿನ್ನಿರಿ ಮತ್ತು ಕುಡಿಯಿರಿ.” | كُلُواْ وَٱشۡرَبُواْ هَنِيٓـَٔۢا بِمَآ أَسۡلَفۡتُمۡ فِي ٱلۡأَيَّامِ ٱلۡخَالِيَةِ ٢٤ |
| 25. | ಆದರೆ ಯಾರಿಗೆ ಅವನ ಕರ್ಮಪುಸ್ತಕವನ್ನು ಎಡಗೈಯಲ್ಲಿ ನೀಡಲಾಗುತ್ತದೋ ಅವನು ಹೇಳುವನು: “ನನಗೆ ನನ್ನ ಕರ್ಮ-ಪುಸ್ತಕವನ್ನು ನೀಡದಿರುತ್ತಿದ್ದರೆ ಎಷ್ಟು ಚೆನ್ನಾಗಿತ್ತು! | وَأَمَّا مَنۡ أُوتِيَ كِتَٰبَهُۥ بِشِمَالِهِۦ فَيَقُولُ يَٰلَيۡتَنِي لَمۡ أُوتَ كِتَٰبِيَهۡ ٢٥ |
| 26. | ನನ್ನ ವಿಚಾರಣೆ ಏನೆಂದು ನನಗೆ ತಿಳಿಯದಿರುತ್ತಿದ್ದರೆ (ಎಷ್ಟು ಚೆನ್ನಾಗಿತ್ತು)! | وَلَمۡ أَدۡرِ مَا حِسَابِيَهۡ ٢٦ |
| 27. | ಮರಣದೊಂದಿಗೆ ಎಲ್ಲವೂ ಕೊನೆಗೊಳ್ಳುತ್ತಿದ್ದರೆ ಎಷ್ಟು ಚೆನ್ನಾಗಿತ್ತು! | يَٰلَيۡتَهَا كَانَتِ ٱلۡقَاضِيَةَ ٢٧ |
| 28. | ನನಗೆ ನನ್ನ ಆಸ್ತಿ ಪ್ರಯೋಜನ ನೀಡಲಿಲ್ಲ. | مَآ أَغۡنَىٰ عَنِّي مَالِيَهۡۜ ٢٨ |
| 29. | ನನ್ನ ಅಧಿಕಾರವು ನನ್ನಿಂದ ಹೊರಟುಹೋಗಿದೆ.” | هَلَكَ عَنِّي سُلۡطَٰنِيَهۡ ٢٩ |
| 30. | (ಆಗ ಹೀಗೆ ಆಜ್ಞಾಪಿಸಲಾಗುವುದು): “ಅವನನ್ನು ಹಿಡಿಯಿರಿ; ಮತ್ತು ಅವನಿಗೆ ಸಂಕೋಲೆಯನ್ನು ತೊಡಿಸಿರಿ. | خُذُوهُ فَغُلُّوهُ ٣٠ |
| 31. | ನಂತರ ಅವನನ್ನು ನರಕದಲ್ಲಿ ಹಾಕಿರಿ. | ثُمَّ ٱلۡجَحِيمَ صَلُّوهُ ٣١ |
| 32. | ನಂತರ ಎಪ್ಪತ್ತು ಮೊಳ ಅಳತೆಯಿರುವ ಸಂಕೋಲೆಯಲ್ಲಿ ಅವನನ್ನು ನುಸುಳಿಸಿರಿ. | ثُمَّ فِي سِلۡسِلَةٖ ذَرۡعُهَا سَبۡعُونَ ذِرَاعٗا فَٱسۡلُكُوهُ ٣٢ |
| 33. | ನಿಶ್ಚಯವಾಗಿಯೂ, ಅವನು ಪರಮೋಚ್ಛನಾದ ಅಲ್ಲಾಹನಲ್ಲಿ ವಿಶ್ವಾಸವಿಡುತ್ತಿರಲಿಲ್ಲ. | إِنَّهُۥ كَانَ لَا يُؤۡمِنُ بِٱللَّهِ ٱلۡعَظِيمِ ٣٣ |
| 34. | ಅವನು ಬಡವರಿಗೆ ಅನ್ನ ನೀಡಲು ಪ್ರೇರೇಪಿಸುತ್ತಿರಲಿಲ್ಲ. | وَلَا يَحُضُّ عَلَىٰ طَعَامِ ٱلۡمِسۡكِينِ ٣٤ |
| 35. | ಆದ್ದರಿಂದ ಇಂದು ಅವನಿಗೆ ಇಲ್ಲಿ ಯಾವುದೇ ಆತ್ಮೀಯ ಗೆಳೆಯನಿಲ್ಲ. | فَلَيۡسَ لَهُ ٱلۡيَوۡمَ هَٰهُنَا حَمِيمٞ ٣٥ |

| | | |
|---|---|---|
| 36. | ಕೀವಿನಿಂದಲೇ ಹೊರತು ಅವನಿಗೆ ಬೇರೆ ಆಹಾರವಿಲ್ಲ. | وَلَا طَعَامٌ إِلَّا مِنۡ غِسۡلِينٖ ٣٦ |
| 37. | ಅದನ್ನು ಪಾಪಿಗಳ ಹೊರತಾಗಿ ಯಾರೂ ಸೇವಿಸುವುದಿಲ್ಲ. | لَّا يَأۡكُلُهُۥٓ إِلَّا ٱلۡخَٰطِـُٔونَ ٣٧ |
| 38. | ಆದ್ದರಿಂದ ನೀವು ನೋಡುತ್ತಿರುವುದರ ಮೇಲೆ ನಾನು ಆಣೆ ಮಾಡುತ್ತೇನೆ. | فَلَآ أُقۡسِمُ بِمَا تُبۡصِرُونَ ٣٨ |
| 39. | ನೀವು ನೋಡದಿರುವವುಗಳ ಮೇಲೂ (ಆಣೆ ಮಾಡುತ್ತೇನೆ). | وَمَا لَا تُبۡصِرُونَ ٣٩ |
| 40. | ನಿಶ್ಚಯವಾಗಿಯೂ ಇದು (ಕುರ್‌ಆನ್) ಒಬ್ಬ ಗಣ್ಯ ಸಂದೇಶವಾಹಕನ ವಚನವಾಗಿದೆ. | إِنَّهُۥ لَقَوۡلُ رَسُولٖ كَرِيمٖ ٤٠ |
| 41. | ಇದು ಯಾವುದೇ ಕವಿಯ ಮಾತುಗಳಲ್ಲ. ನೀವು ಸ್ವಲ್ಪವೇ ವಿಶ್ವಾಸವಿಡುತ್ತೀರಿ. | وَمَا هُوَ بِقَوۡلِ شَاعِرٖۚ قَلِيلٗا مَّا تُؤۡمِنُونَ ٤١ |
| 42. | ಇದು ಜ್ಯೋತಿಷಿಯ ಮಾತುಗಳೂ ಅಲ್ಲ. ನೀವು ಸ್ವಲ್ಪವೇ ಉಪದೇಶ ಪಡೆಯುತ್ತೀರಿ. | وَلَا بِقَوۡلِ كَاهِنٖۚ قَلِيلٗا مَّا تَذَكَّرُونَ ٤٢ |
| 43. | ಇದು ಸರ್ವಲೋಕಗಳ ಪರಿಪಾಲಕನಿಂದ (ಅಲ್ಲಾಹನಿಂದ) ಅವತೀರ್ಣವಾದ ಗ್ರಂಥವಾಗಿದೆ. | تَنزِيلٞ مِّن رَّبِّ ٱلۡعَٰلَمِينَ ٤٣ |
| 44. | ಅವರು (ಪ್ರವಾದಿ) ನಮ್ಮ ಮೇಲೆ ಕೆಲವು (ಸುಳ್ಳು) ಮಾತುಗಳನ್ನು ಆರೋಪಿಸುತ್ತಿದ್ದರೆ, | وَلَوۡ تَقَوَّلَ عَلَيۡنَا بَعۡضَ ٱلۡأَقَاوِيلِ ٤٤ |
| 45. | ನಾವು ಅವರನ್ನು ಬಲಗೈಯಿಂದ ಹಿಡಿಯುತ್ತಿದ್ದೆವು. | لَأَخَذۡنَا مِنۡهُ بِٱلۡيَمِينِ ٤٥ |
| 46. | ನಂತರ ನಾವು ಅವರ ಅಪಧಮನಿಯನ್ನು ಕತ್ತರಿಸುತ್ತಿದ್ದೆವು. | ثُمَّ لَقَطَعۡنَا مِنۡهُ ٱلۡوَتِينَ ٤٦ |
| 47. | ಆಗ ಅವರನ್ನು (ನಮ್ಮಿಂದ) ತಡೆಯುವವರು ನಿಮ್ಮಲ್ಲಿ ಯಾರೂ ಇರಲಾರರು. | فَمَا مِنكُم مِّنۡ أَحَدٍ عَنۡهُ حَٰجِزِينَ ٤٧ |
| 48. | ನಿಶ್ಚಯವಾಗಿಯೂ ಇದು ದೇವಭಯವುಳ್ಳವರಿಗೆ ಒಂದು ಉಪದೇಶವಾಗಿದೆ. | وَإِنَّهُۥ لَتَذۡكِرَةٞ لِّلۡمُتَّقِينَ ٤٨ |
| 49. | ನಿಶ್ಚಯವಾಗಿಯೂ ನಿಮ್ಮಲ್ಲಿ ಇದನ್ನು ನಿಷೇಧಿಸುವವರಿದ್ದಾರೆಂದು ನಮಗೆ ಬಹಳ ಚೆನ್ನಾಗಿ ತಿಳಿದಿದೆ. | وَإِنَّا لَنَعۡلَمُ أَنَّ مِنكُم مُّكَذِّبِينَ ٤٩ |
| 50. | ನಿಶ್ಚಯವಾಗಿಯೂ ಅದು (ನಿಷೇಧಿಸುವುದು) ಸತ್ಯನಿಷೇಧಿಗಳ ವಿಷಾದಕ್ಕೆ ಕಾರಣವಾಗಲಿದೆ. | وَإِنَّهُۥ لَحَسۡرَةٌ عَلَى ٱلۡكَٰفِرِينَ ٥٠ |
| 51. | ನಿಶ್ಚಯವಾಗಿಯೂ ಅದು ಖಚಿತ ಸತ್ಯವಾಗಿದೆ. | وَإِنَّهُۥ لَحَقُّ ٱلۡيَقِينِ ٥١ |
| 52. | ಆದ್ದರಿಂದ ನೀವು ಪರಮೋಚ್ಛನಾದ ನಿಮ್ಮ ಪರಿಪಾಲಕನ (ಅಲ್ಲಾಹನ) ಹೆಸರಿನಿಂದ ಅವನ ಪರಿಶುದ್ಧಿಯನ್ನು ಕೊಂಡಾಡಿರಿ. | فَسَبِّحۡ بِٱسۡمِ رَبِّكَ ٱلۡعَظِيمِ ٥٢ |

# 70. ಅಲ್-ಮಆರಿಜ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ಸಂಭವಿಸಲಿರುವ ಶಿಕ್ಷೆಯ ಬಗ್ಗೆ ಕೇಳುಗನೊಬ್ಬನು ಕೇಳಿದನು. | سَأَلَ سَآئِلُۢ بِعَذَابٖ وَاقِعٖ ١ |
| 2. | ಸತ್ಯನಿಷೇಧಿಗಳಿಗೆ (ಸಂಭವಿಸುವ ಶಿಕ್ಷೆ). ಅದನ್ನು ನಿವಾರಿಸುವವರಾರೂ ಇಲ್ಲ. | لِّلۡكَٰفِرِينَ لَيۡسَ لَهُۥ دَافِعٞ ٢ |
| 3. | ಆರೋಹಣ ದಾರಿಗಳ ಒಡೆಯನಾದ ಅಲ್ಲಾಹನಿಂದ (ಸಂಭವಿಸಲಿರುವ ಶಿಕ್ಷೆ). | مِّنَ ٱللَّهِ ذِي ٱلۡمَعَارِجِ ٣ |
| 4. | ಐವತ್ತು ಸಾವಿರ ವರ್ಷಗಳ ಗಾತ್ರವನ್ನು ಹೊಂದಿರುವ ಒಂದು ದಿನದಲ್ಲಿ ದೇವದೂತರು ಮತ್ತು ರೂಹ್ ಅವನ ಬಳಿಗೆ ಏರಿಹೋಗುತ್ತಾರೆ. | تَعۡرُجُ ٱلۡمَلَٰٓئِكَةُ وَٱلرُّوحُ إِلَيۡهِ فِي يَوۡمٖ كَانَ مِقۡدَارُهُۥ خَمۡسِينَ أَلۡفَ سَنَةٖ ٤ |
| 5. | ಆದ್ದರಿಂದ ನೀವು ಉತ್ತಮ ರೀತಿಯಲ್ಲಿ ತಾಳ್ಮೆ ತೋರಿರಿ. | فَٱصۡبِرۡ صَبۡرٗا جَمِيلًا ٥ |
| 6. | ನಿಶ್ಚಯವಾಗಿಯೂ ಅವರು ಅದನ್ನು ದೂರದಲ್ಲಿರುವಂತೆ ಕಾಣುತ್ತಿದ್ದಾರೆ. | إِنَّهُمۡ يَرَوۡنَهُۥ بَعِيدٗا ٦ |
| 7. | ಆದರೆ ನಾವು ಅದನ್ನು ಸಮೀಪದಲ್ಲಿರುವಂತೆ ಕಾಣುತ್ತಿದ್ದೇವೆ. | وَنَرَىٰهُ قَرِيبٗا ٧ |
| 8. | ಆಕಾಶವು ಎಣ್ಣೆಯ ಮಡ್ಡಿಯಂತಾಗುವ ದಿನ. | يَوۡمَ تَكُونُ ٱلسَّمَآءُ كَٱلۡمُهۡلِ ٨ |
| 9. | ಪರ್ವತಗಳು ಬಣ್ಣದ ತುಪ್ಪಳದಂತಾಗುವ ದಿನ. | وَتَكُونُ ٱلۡجِبَالُ كَٱلۡعِهۡنِ ٩ |
| 10. | ಯಾವುದೇ ಒಬ್ಬ ಗೆಳೆಯನು ತನ್ನ ಆತ್ಮೀಯ ಗೆಳೆಯನ ಬಗ್ಗೆ ಕೇಳುವುದಿಲ್ಲ. | وَلَا يَسۡـَٔلُ حَمِيمٌ حَمِيمٗا ١٠ |
| 11. | ವಾಸ್ತವವಾಗಿ ಅವರನ್ನು ಪರಸ್ಪರ ತೋರಿಸಲಾಗುವುದು. ಅಪರಾಧಿಯು ಆಶಿಸುವನು—ಅಂದಿನ ಶಿಕ್ಷೆಗೆ ಬದಲಿಯಾಗಿ ತನ್ನ ಗಂಡುಮಕ್ಕಳನ್ನು, | يُبَصَّرُونَهُمۡۚ يَوَدُّ ٱلۡمُجۡرِمُ لَوۡ يَفۡتَدِي مِنۡ عَذَابِ يَوۡمِئِذِۭ بِبَنِيهِ ١١ |
| 12. | ತನ್ನ ಪತ್ನಿಯನ್ನು ಮತ್ತು ಸಹೋದರನನ್ನು, | وَصَٰحِبَتِهِۦ وَأَخِيهِ ١٢ |
| 13. | ತನಗೆ ಆಶ್ರಯ ನೀಡಿದ ತನ್ನ ಕುಟುಂಬವನ್ನು, | وَفَصِيلَتِهِ ٱلَّتِي تُـٔۡوِيهِ ١٣ |
| 14. | ಮತ್ತು ಭೂಮಿಯಲ್ಲಿರುವ ಎಲ್ಲರನ್ನೂ ಪರಿಹಾರವಾಗಿ ನೀಡಿ ಅದು ತನ್ನನ್ನು ಪಾರು ಮಾಡುತ್ತಿದ್ದರೆ (ಎಷ್ಟು ಚೆನ್ನಾಗಿತ್ತು)! | وَمَن فِي ٱلۡأَرۡضِ جَمِيعٗا ثُمَّ يُنجِيهِ ١٤ |
| 15. | ಎಂದಿಗೂ ಇಲ್ಲ! ನಿಶ್ಚಯವಾಗಿಯೂ ಅದು ಧಗಧಗಿಸುವ | كَلَّآۖ إِنَّهَا لَظَىٰ ١٥ |

| | | |
|---|---|---|
| | ಬೆಂಕಿಯಾಗಿದೆ. | |
| 16. | ತಲೆಯ ಚರ್ಮವನ್ನು ಸುಲಿಯುವಂತಹ ಬೆಂಕಿ. | نَزَّاعَةً لِّلشَّوَىٰ ١٦ |
| 17. | ಹಿಂದಕ್ಕೆ ಸರಿದ ಮತ್ತು ಮುಖ ತಿರುಗಿಸಿ ನಡೆದ ಎಲ್ಲರನ್ನೂ ಅದು ಕರೆಯುತ್ತದೆ. | تَدْعُواْ مَنْ أَدْبَرَ وَتَوَلَّىٰ ١٧ |
| 18. | (ಆಸ್ತಿಯನ್ನು) ಕೂಡಿಟ್ಟು ಜೋಪಾನವಾಗಿಟ್ಟವನನ್ನೂ (ಕರೆಯುತ್ತದೆ). | وَجَمَعَ فَأَوْعَىٰٓ ١٨ |
| 19. | ನಿಶ್ಚಯವಾಗಿಯೂ ಮನುಷ್ಯನನ್ನು ಚಿಂತಾಕ್ರಾಂತನಾಗಿ ಸೃಷ್ಟಿಸಲಾಗಿದೆ. | إِنَّ ٱلْإِنسَٰنَ خُلِقَ هَلُوعًا ١٩ |
| 20. | ಅವನಿಗೆ ವಿಪತ್ತು ಸಂಭವಿಸಿದರೆ ತಾಳ್ಮೆಗೆಡುತ್ತಾನೆ. | إِذَا مَسَّهُ ٱلشَّرُّ جَزُوعًا ٢٠ |
| 21. | ಅವನಿಗೆ ಆರಾಮ ದೊರೆತರೆ ಜಿಪುಣನಾಗುತ್ತಾನೆ. | وَإِذَا مَسَّهُ ٱلْخَيْرُ مَنُوعًا ٢١ |
| 22. | ಆದರೆ ನಮಾಝ್ ನಿರ್ವಹಿಸುವವರು ಇದಕ್ಕೆ ಹೊರತಾಗಿದ್ದಾರೆ. | إِلَّا ٱلْمُصَلِّينَ ٢٢ |
| 23. | ಅವರು ಯಾರೆಂದರೆ ತಮ್ಮ ನಮಾಝ್‌ನಲ್ಲಿ ಸ್ಥಿರವಾಗಿರುವವರು. | ٱلَّذِينَ هُمْ عَلَىٰ صَلَاتِهِمْ دَآئِمُونَ ٢٣ |
| 24. | ತಮ್ಮ ಸಂಪತ್ತಿನಲ್ಲಿ ಒಂದು ನಿಶ್ಚಿತ ಹಕ್ಕು ಇರುವವರು. | وَٱلَّذِينَ فِىٓ أَمْوَٰلِهِمْ حَقٌّ مَّعْلُومٌ ٢٤ |
| 25. | ಬೇಡುವವನಿಗೆ ಮತ್ತು (ಉಪಜೀವನ) ತಡೆಯಲ್ಪಟ್ಟವನಿಗೆ. | لِّلسَّآئِلِ وَٱلْمَحْرُومِ ٢٥ |
| 26. | ಅವರು ಪ್ರತಿಫಲದ ದಿನವನ್ನು ಸತ್ಯವೆಂದು ದೃಢೀಕರಿಸುವವರು. | وَٱلَّذِينَ يُصَدِّقُونَ بِيَوْمِ ٱلدِّينِ ٢٦ |
| 27. | ಅವರು ತಮ್ಮ ಪರಿಪಾಲಕನ (ಅಲ್ಲಾಹನ) ಶಿಕ್ಷೆಯ ಬಗ್ಗೆ ಭಯಪಡುವವರು. | وَٱلَّذِينَ هُم مِّنْ عَذَابِ رَبِّهِم مُّشْفِقُونَ ٢٧ |
| 28. | ನಿಶ್ಚಯವಾಗಿಯೂ ಅವರ ಪರಿಪಾಲಕನ (ಅಲ್ಲಾಹನ) ಶಿಕ್ಷೆಯು ಭಯಪಡದೇ ಇರುವಂತದ್ದಲ್ಲ. | إِنَّ عَذَابَ رَبِّهِمْ غَيْرُ مَأْمُونٍ ٢٨ |
| 29. | ಅವರು ತಮ್ಮ ಗುಹ್ಯಾಂಗಗಳನ್ನು ಕಾಪಾಡಿಕೊಳ್ಳುವವರು. | وَٱلَّذِينَ هُمْ لِفُرُوجِهِمْ حَٰفِظُونَ ٢٩ |
| 30. | ಅವರ ಪತ್ನಿಯರು ಅಥವಾ ಅವರ ಬಲಗೈಗಳು ಅಧೀನದಲ್ಲಿರಿಸಿ-ದವರನ್ನು ಬಿಟ್ಟು. ನಿಶ್ಚಯವಾಗಿಯೂ ಅವರು ಆಕ್ಷೇಪಾರ್ಹರಲ್ಲ. | إِلَّا عَلَىٰٓ أَزْوَٰجِهِمْ أَوْ مَا مَلَكَتْ أَيْمَٰنُهُمْ فَإِنَّهُمْ غَيْرُ مَلُومِينَ ٣٠ |
| 31. | ಆದರೆ ಯಾರು ಅದಕ್ಕಿಂತ ಆಚೆಗಿರುವುದನ್ನು ಹುಡುಕುತ್ತಾರೋ ಅವರೇ ಎಲ್ಲೆ ಮೀರಿದವರು. | فَمَنِ ٱبْتَغَىٰ وَرَآءَ ذَٰلِكَ فَأُوْلَٰٓئِكَ هُمُ ٱلْعَادُونَ ٣١ |
| 32. | ಅವರು ತಮ್ಮ ವಿಶ್ವಾಸಾರ್ಹತೆಗಳನ್ನು ಮತ್ತು ಕರಾರುಗಳನ್ನು ಪಾಲಿಸುವವರು. | وَٱلَّذِينَ هُمْ لِأَمَٰنَٰتِهِمْ وَعَهْدِهِمْ رَٰعُونَ ٣٢ |
| 33. | ಅವರು ತಮ್ಮ ಸಾಕ್ಷಿಗಳಲ್ಲಿ ನೇರವಾಗಿ ನಿಲ್ಲುವವರು. | وَٱلَّذِينَ هُم بِشَهَٰدَٰتِهِمْ قَآئِمُونَ ٣٣ |

| | | |
|---|---|---|
| 34. | ಅವರು ತಮ್ಮ ನಮಾಝ್‌ಗಳನ್ನು ಸಂರಕ್ಷಿಸುವವರು. | وَٱلَّذِينَ هُمۡ عَلَىٰ صَلَاتِهِمۡ يُحَافِظُونَ ٣٤ |
| 35. | ಅವರು ಸ್ವರ್ಗಗಳಲ್ಲಿ ಗೌರವಿಸಲ್ಪಡುವರು. | أُوْلَٰٓئِكَ فِي جَنَّٰتٖ مُّكۡرَمُونَ ٣٥ |
| 36. | ಸತ್ಯನಿಷೇಧಿಗಳಿಗೇನಾಗಿದೆ? ಅವರೇಕೆ ನಿಮ್ಮ ಕಡೆಗೆ ಅವಸರದಿಂದ ಬರುತ್ತಿದ್ದಾರೆ? | فَمَالِ ٱلَّذِينَ كَفَرُواْ قِبَلَكَ مُهۡطِعِينَ ٣٦ |
| 37. | ಗುಂಪು ಗುಂಪಾಗಿ ಬಲಭಾಗದಿಂದ ಮತ್ತು ಎಡಭಾಗದಿಂದ?[1] | عَنِ ٱلۡيَمِينِ وَعَنِ ٱلشِّمَالِ عِزِينَ ٣٧ |
| 38. | ತನ್ನನ್ನು ಸುಖಸಮೃದ್ಧವಾದ ಸ್ವರ್ಗಕ್ಕೆ ಪ್ರವೇಶ ಮಾಡಿಸಬೇಕೆಂದು ಅವರಲ್ಲಿ ಪ್ರತಿಯೊಬ್ಬನೂ ಹಾರೈಸುತ್ತಾನೆಯೇ? | أَيَطۡمَعُ كُلُّ ٱمۡرِيٕٖ مِّنۡهُمۡ أَن يُدۡخَلَ جَنَّةَ نَعِيمٖ ٣٨ |
| 39. | ಎಂದಿಗೂ ಇಲ್ಲ; ನಾವು ಅವರನ್ನು ಅವರು ತಿಳಿದಿರುವ ವಸ್ತುವಿನಿಂದಲೇ ಸೃಷ್ಟಿಸಿದ್ದೇವೆ. | كَلَّآۖ إِنَّا خَلَقۡنَٰهُم مِّمَّا يَعۡلَمُونَ ٣٩ |
| 40. | ಆದ್ದರಿಂದ ನಾನು ಪೂರ್ವಗಳ ಮತ್ತು ಪಶ್ಚಿಮಗಳ ಪರಿಪಾಲಕನ (ಅಲ್ಲಾಹನ) ಮೇಲೆ ಆಣೆ ಮಾಡುತ್ತೇನೆ. ನಿಶ್ಚಯವಾಗಿಯೂ ನಮಗೆ ಸಾಮರ್ಥ್ಯವಿದೆ. | فَلَآ أُقۡسِمُ بِرَبِّ ٱلۡمَشَٰرِقِ وَٱلۡمَغَٰرِبِ إِنَّا لَقَٰدِرُونَ ٤٠ |
| 41. | ಅವರ ಬದಲಿಗೆ ಅವರಿಗಿಂತ ಶ್ರೇಷ್ಠರನ್ನು ತರಲು. ನಮ್ಮನ್ನು ಯಾರಿಗೂ ಸೋಲಿಸಲಾಗದು. | عَلَىٰٓ أَن نُّبَدِّلَ خَيۡرٗا مِّنۡهُمۡ وَمَا نَحۡنُ بِمَسۡبُوقِينَ ٤١ |
| 42. | ಆದ್ದರಿಂದ ಅವರನ್ನು ಅವರ ಪಾಡಿಗೆ ಬಿಟ್ಟುಬಿಡಿ. ಅವರು ಅನಗತ್ಯ ಮಾತುಗಳಲ್ಲಿ ಮತ್ತು ಆಟದಲ್ಲಿ ಮಗ್ನರಾಗಲಿ. ಎಲ್ಲಿಯ-ವರೆಗೆಂದರೆ, ಅವರಿಗೆ ವಾಗ್ದಾನ ಮಾಡಲಾಗುವ ಆ ದಿನವನ್ನು ಅವರು ಭೇಟಿಯಾಗುವ ತನಕ. | فَذَرۡهُمۡ يَخُوضُواْ وَيَلۡعَبُواْ حَتَّىٰ يُلَٰقُواْ يَوۡمَهُمُ ٱلَّذِي يُوعَدُونَ ٤٢ |
| 43. | ಅವರು ಸಮಾಧಿಗಳಿಂದ ತರಾತುರಿಯಲ್ಲಿ ಹೊರಟುಬರುವ ದಿನ! ಅವರು ಒಂದು ಗುರಿಯೆಡೆಗೆ ವೇಗವಾಗಿ ಸಾಗುವಂತೆ. | يَوۡمَ يَخۡرُجُونَ مِنَ ٱلۡأَجۡدَاثِ سِرَاعٗا كَأَنَّهُمۡ إِلَىٰ نُصُبٖ يُوفِضُونَ ٤٣ |
| 44. | ಅವರ ಕಣ್ಣುಗಳು ತಗ್ಗಿಕೊಂಡಿರುವುವು. ಅವಮಾನವು ಅವರನ್ನು ಆವರಿಸಿಕೊಳ್ಳುವುದು. ಅದೇ ಅವರಿಗೆ ವಾಗ್ದಾನ ಮಾಡಲಾಗುತ್ತಿದ್ದ ದಿನ. | خَٰشِعَةً أَبۡصَٰرُهُمۡ تَرۡهَقُهُمۡ ذِلَّةٞۚ ذَٰلِكَ ٱلۡيَوۡمُ ٱلَّذِي كَانُواْ يُوعَدُونَ ٤٤ |

[1] ಮಕ್ಕಾದ ಸತ್ಯನಿಷೇಧಿಗಳು ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಸಭೆಗೆ ಓಡೋಡಿ ಬಂದು ಕೂರುತ್ತಿದ್ದರು. ಆದರೆ ಪ್ರವಾದಿಯ ಮಾತುಗಳನ್ನು ಕೇಳಿ ಅದರ ಪ್ರಕಾರ ನಡೆಯುವ ಬದಲು ಅವರು ತಮಾಷೆ ಮಾಡಿ ನಗುತ್ತಿದ್ದರು. ಅವರು ಗುಂಪು ಗುಂಪಾಗಿ ಇರುತ್ತಿದ್ದರು. ಮುಸ್ಲಿಮರು ಸ್ವರ್ಗಕ್ಕೆ ಹೋಗುವುದಾದರೆ ನಾವು ಅದಕ್ಕಿಂತಲೂ ಮೊದಲು ಸ್ವರ್ಗ ಪ್ರವೇಶ ಮಾಡುತ್ತೇವೆ ಎಂದು ಅವರು ಹೇಳುತ್ತಿದ್ದರು.

# 71. ನೂಹ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ನಿಶ್ಚಯವಾಗಿಯೂ ನಾವು ನೂಹರನ್ನು ಅವರ ಜನರ ಬಳಿಗೆ ಕಳುಹಿಸಿದೆವು. ಅವರಿಗೆ ಯಾತನಾಮಯ ಶಿಕ್ಷೆ ಎರಗುವುದಕ್ಕೆ ಮೊದಲೇ ಅವರಿಗೆ ಎಚ್ಚರಿಕೆ ನೀಡಿರಿ ಎಂಬ ಸಂದೇಶದೊಂದಿಗೆ. | إِنَّآ أَرۡسَلۡنَا نُوحًا إِلَىٰ قَوۡمِهِۦٓ أَنۡ أَنذِرۡ قَوۡمَكَ مِن قَبۡلِ أَن يَأۡتِيَهُمۡ عَذَابٌ أَلِيمٞ ١ |
| 2. | ನೂಹ್ ಹೇಳಿದರು: "ಓ ನನ್ನ ಜನರೇ! ನಿಶ್ಚಯವಾಗಿಯೂ ನಾನು ನಿಮಗೆ ಸ್ಪಷ್ಟ ಮುನ್ನೆಚ್ಚರಿಕೆಗಾರನಾಗಿದ್ದೇನೆ. | قَالَ يَٰقَوۡمِ إِنِّي لَكُمۡ نَذِيرٞ مُّبِينٌ ٢ |
| 3. | ನೀವು ಅಲ್ಲಾಹನನ್ನು ಆರಾಧಿಸಿರಿ, ಅವನನ್ನು ಭಯಪಡಿರಿ ಮತ್ತು ನನ್ನನ್ನು ಅನುಸರಿಸಿರಿ. | أَنِ ٱعۡبُدُواْ ٱللَّهَ وَٱتَّقُوهُ وَأَطِيعُونِ ٣ |
| 4. | ಅವನು ನಿಮ್ಮ ಪಾಪಗಳನ್ನು ಕ್ಷಮಿಸುವನು ಮತ್ತು ಒಂದು ನಿಶ್ಚಿತ ಅವಧಿಯವರೆಗೆ ನಿಮ್ಮನ್ನು ಬಿಟ್ಟುಬಿಡುವನು. ನಿಶ್ಚಯವಾಗಿಯೂ ಅಲ್ಲಾಹನ ಅವಧಿಯು ಬಂದರೆ ಅದನ್ನು ಮುಂದೂಡಲಾಗುವುದಿಲ್ಲ. ನೀವು ತಿಳಿದವರಾಗಿದ್ದರೆ! | يَغۡفِرۡ لَكُم مِّن ذُنُوبِكُمۡ وَيُؤَخِّرۡكُمۡ إِلَىٰٓ أَجَلٖ مُّسَمًّىۚ إِنَّ أَجَلَ ٱللَّهِ إِذَا جَآءَ لَا يُؤَخَّرُۚ لَوۡ كُنتُمۡ تَعۡلَمُونَ ٤ |
| 5. | ನೂಹ್ ಹೇಳಿದರು: "ನನ್ನ ಪರಿಪಾಲಕನೇ! ನಿಶ್ಚಯವಾಗಿಯೂ ನಾನು ನನ್ನ ಜನರನ್ನು ಹಗಲು-ರಾತ್ರಿ ನಿನ್ನ ಕಡೆಗೆ ಕರೆದಿದ್ದೇನೆ. | قَالَ رَبِّ إِنِّي دَعَوۡتُ قَوۡمِي لَيۡلٗا وَنَهَارٗا ٥ |
| 6. | ಆದರೆ ನನ್ನ ಕರೆಯು ಅವರಿಗೆ ಪಲಾಯನವನ್ನೇ ವಿನಾ ಇನ್ನೇನನ್ನೂ ಹೆಚ್ಚಿಸಲಿಲ್ಲ. | فَلَمۡ يَزِدۡهُمۡ دُعَآءِيٓ إِلَّا فِرَارٗا ٦ |
| 7. | ನಿಶ್ಚಯವಾಗಿಯೂ ನೀನು ಅವರನ್ನು ಕ್ಷಮಿಸಬೇಕೆಂದು ನಾನು ಅವರನ್ನು ನಿನ್ನ ಕಡೆಗೆ ಕರೆದಾಗಲೆಲ್ಲಾ ಅವರು ತಮ್ಮ ಬೆರಳುಗಳನ್ನು ಕಿವಿಗಳಲ್ಲಿಟ್ಟರು, ಬಟ್ಟೆಗಳಿಂದ ತಮ್ಮನ್ನು ಮುಚ್ಚಿಕೊಂಡರು, (ಸತ್ಯನಿಷೇಧದಲ್ಲಿ) ದೃಢವಾಗಿ ನಿಂತರು ಮತ್ತು ಮಹಾ ಅಹಂಕಾರವನ್ನು ತೋರಿದರು. | وَإِنِّي كُلَّمَا دَعَوۡتُهُمۡ لِتَغۡفِرَ لَهُمۡ جَعَلُوٓاْ أَصَٰبِعَهُمۡ فِيٓ ءَاذَانِهِمۡ وَٱسۡتَغۡشَوۡاْ ثِيَابَهُمۡ وَأَصَرُّواْ وَٱسۡتَكۡبَرُواْ ٱسۡتِكۡبَارٗا ٧ |
| 8. | ನಂತರ ನಿಶ್ಚಯವಾಗಿಯೂ ನಾನು ಅವರನ್ನು ಉಚ್ಚ ಧ್ವನಿಯಲ್ಲಿ ಕರೆದೆ. | ثُمَّ إِنِّي دَعَوۡتُهُمۡ جِهَارٗا ٨ |
| 9. | ನಂತರ ನಾನು ಅವರಿಗೆ ಬಹಿರಂಗವಾಗಿ ತಿಳಿಸಿದೆ. ಅತ್ಯಂತ ರಹಸ್ಯವಾಗಿಯೂ ತಿಳಿಸಿದೆ. | ثُمَّ إِنِّيٓ أَعۡلَنتُ لَهُمۡ وَأَسۡرَرۡتُ لَهُمۡ إِسۡرَارٗا ٩ |
| 10. | ನಾನು ಹೇಳಿದೆ: "ನೀವು ನಿಮ್ಮ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ಕ್ಷಮೆಯಾಚಿಸಿರಿ. ನಿಶ್ಚಯವಾಗಿಯೂ ಅವನು ಅತ್ಯಧಿಕ ಕ್ಷಮಿಸುವವನು. | فَقُلۡتُ ٱسۡتَغۡفِرُواْ رَبَّكُمۡ إِنَّهُۥ كَانَ غَفَّارٗا ١٠ |

11. ಅವನು ಆಕಾಶದಿಂದ ನಿಮಗೆ ಧಾರಾಕಾರ ಮಳೆಯನ್ನು ಸುರಿಸುವನು.

يُرۡسِلِ ٱلسَّمَآءَ عَلَيۡكُم مِّدۡرَارٗا ١١

12. ಅವನು ನಿಮಗೆ ಹೇರಳ ಆಸ್ತಿಪಾಸ್ತಿ ಮತ್ತು ಗಂಡುಮಕ್ಕಳನ್ನು ನೀಡಿ ನೆರವಾಗುವನು. ಅವನು ನಿಮಗೆ ತೋಟಗಳನ್ನು ಕೊಡುವನು ಮತ್ತು ಹೊಳೆಗಳನ್ನು ಹರಿಸುವನು."

وَيُمۡدِدۡكُم بِأَمۡوَٰلٖ وَبَنِينَ وَيَجۡعَل لَّكُمۡ جَنَّـٰتٖ وَيَجۡعَل لَّكُمۡ أَنۡهَٰرٗا ١٢

13. ಅಲ್ಲಾಹನ ಮಹಿಮೆಯಲ್ಲಿ ನಂಬಿಕೆಯಿಡದಿರಲು ನಿಮಗೇನಾಗಿದೆ?

مَّا لَكُمۡ لَا تَرۡجُونَ لِلَّهِ وَقَارٗا ١٣

14. ಅವನು ನಿಮ್ಮನ್ನು ಹಲವು ಘಟ್ಟಗಳ ಮೂಲಕ ಸೃಷ್ಟಿಸಿದ್ದಾನೆ.

وَقَدۡ خَلَقَكُمۡ أَطۡوَارًا ١٤

15. ಅಲ್ಲಾಹು ಏಳು ಆಕಾಶಗಳನ್ನು ಹೇಗೆ ಅಂತಸ್ತುಗಳಾಗಿ ಸೃಷ್ಟಿಸಿದ್ದಾನೆಂದು ನೀವು ನೋಡಿಲ್ಲವೇ?

أَلَمۡ تَرَوۡاْ كَيۡفَ خَلَقَ ٱللَّهُ سَبۡعَ سَمَٰوَٰتٖ طِبَاقٗا ١٥

16. ಅವನು ಅವುಗಳಲ್ಲಿ ಚಂದ್ರನನ್ನು ಬೆಳಕಾಗಿ ಮತ್ತು ಸೂರ್ಯನನ್ನು (ಉರಿಯುವ) ದೀಪವಾಗಿ ಮಾಡಿದನು.

وَجَعَلَ ٱلۡقَمَرَ فِيهِنَّ نُورٗا وَجَعَلَ ٱلشَّمۡسَ سِرَاجٗا ١٦

17. ಅಲ್ಲಾಹು ನಿಮ್ಮನ್ನು (ವಿಶೇಷ ಮುತುವರ್ಜಿ ನೀಡಿ) ಭೂಮಿಯಿಂದ ಬೆಳೆಸಿದನು.

وَٱللَّهُ أَنۢبَتَكُم مِّنَ ٱلۡأَرۡضِ نَبَاتٗا ١٧

18. ನಂತರ ಅವನು ನಿಮ್ಮನ್ನು ಅದಕ್ಕೆ ಮರಳಿಸುವನು ಮತ್ತು (ವಿಶೇಷ ರೀತಿಯಲ್ಲಿ) ನಿಮ್ಮನ್ನು ಹೊರತರುವನು.

ثُمَّ يُعِيدُكُمۡ فِيهَا وَيُخۡرِجُكُمۡ إِخۡرَاجٗا ١٨

19. ಅಲ್ಲಾಹು ನಿಮಗೆ ಭೂಮಿಯನ್ನು ಒಂದು ಹಾಸಿನಂತೆ ಮಾಡಿಕೊಟ್ಟನು.

وَٱللَّهُ جَعَلَ لَكُمُ ٱلۡأَرۡضَ بِسَاطٗا ١٩

20. ನೀವು ಅದರ ವಿಶಾಲವಾದ ದಾರಿಗಳಲ್ಲಿ ಸಾಗಲಿಕ್ಕಾಗಿ.

لِّتَسۡلُكُواْ مِنۡهَا سُبُلٗا فِجَاجٗا ٢٠

21. ನೂಹ್ ಹೇಳಿದರು: "ನನ್ನ ಪರಿಪಾಲಕನೇ! ನಿಶ್ಚಯವಾಗಿಯೂ ಅವರು ನನಗೆ ಅವಿಧೇಯತೆ ತೋರಿದ್ದಾರೆ. ಯಾರ ಆಸ್ತಿ ಹಾಗೂ ಮಕ್ಕಳು ಅವನಿಗೆ ನಷ್ಟವನ್ನಲ್ಲದೆ ಇನ್ನೇನನ್ನೂ ಹೆಚ್ಚಿಸುವುದಿಲ್ಲವೋ ಅಂತಹವನನ್ನು ಅವರು ಹಿಂಬಾಲಿಸಿದ್ದಾರೆ.

قَالَ نُوحٞ رَّبِّ إِنَّهُمۡ عَصَوۡنِي وَٱتَّبَعُواْ مَن لَّمۡ يَزِدۡهُ مَالُهُۥ وَوَلَدُهُۥٓ إِلَّا خَسَارٗا ٢١

22. ಅವರು ಬಹುದೊಡ್ಡ ಸಂಚು ರೂಪಿಸಿದ್ದಾರೆ.

وَمَكَرُواْ مَكۡرٗا كُبَّارٗا ٢٢

23. "(ಜನರೇ) ನೀವು ನಿಮ್ಮ ದೇವರುಗಳನ್ನು ಯಾವುದೇ ಕಾರಣಕ್ಕೂ ತೊರೆಯಬೇಡಿ. ವದ್ದ್, ಸುವಾಅ್, ಯಗೂಸ್, ಯಊಕ್ ಮತ್ತು ನಸ್ರ್‌ರನ್ನು ಯಾವುದೇ ಕಾರಣಕ್ಕೂ ತೊರೆಯಬೇಡಿ" ಎಂದು ಅವರು ಹೇಳುತ್ತಾರೆ.

وَقَالُواْ لَا تَذَرُنَّ ءَالِهَتَكُمۡ وَلَا تَذَرُنَّ وَدّٗا وَلَا سُوَاعٗا وَلَا يَغُوثَ وَيَعُوقَ وَنَسۡرٗا ٢٣

24. ಅವರು ಈಗಾಗಲೇ ಬಹಳಷ್ಟು ಜನರನ್ನು ದಾರಿ ತಪ್ಪಿಸಿದ್ದಾರೆ.

وَقَدۡ أَضَلُّواْ كَثِيرٗاۖ وَلَا تَزِدِ ٱلظَّـٰلِمِينَ إِلَّا

ನೀನು ಆ ಅಕ್ರಮಿಗಳಿಗೆ ಅವರ ದುರ್ಮಾರ್ಗವನ್ನು ಇನ್ನಷ್ಟು ಹೆಚ್ಚಿಸಿಕೊಡು.”

ضَلَٰلٗا ٢٤

---

25. ಅವರ ಪಾಪಗಳ ಕಾರಣದಿಂದ ಅವರನ್ನು ಮುಳುಗಿಸಲಾಯಿತು. ನಂತರ ನರಕಾಗ್ನಿಗೆ ಪ್ರವೇಶ ಮಾಡಿಸಲಾಯಿತು. ಅವರು ಅಲ್ಲಾಹನ ಹೊರತು ಬೇರೆ ಯಾವುದೇ ಸಹಾಯಕರನ್ನು ಕಾಣಲಿಲ್ಲ.

مِّمَّا خَطِيٓـَٔـٰتِهِمۡ أُغۡرِقُواْ فَأُدۡخِلُواْ نَارٗا فَلَمۡ يَجِدُواْ لَهُم مِّن دُونِ ٱللَّهِ أَنصَارٗا ٢٥

---

26. ನೂಹ್ ಹೇಳಿದರು: “ನನ್ನ ಪರಿಪಾಲಕನೇ! ನೀನು ಭೂಮಿಯ ಮೇಲೆ ಸತ್ಯನಿಷೇಧಿಗಳಲ್ಲಿ ಯಾರನ್ನೂ ವಾಸಿಸಲು ಬಿಡಬೇಡ.

وَقَالَ نُوحٞ رَّبِّ لَا تَذَرۡ عَلَى ٱلۡأَرۡضِ مِنَ ٱلۡكَٰفِرِينَ دَيَّارًا ٢٦

---

27. ನೀನೇನಾದರೂ ಅವರನ್ನು ಬಿಟ್ಟುಬಿಟ್ಟರೆ ಅವರು ನಿನ್ನ ದಾಸರನ್ನು ದಾರಿತಪ್ಪಿಸುವರು. ಅವರು ದುಷ್ಕರ್ಮಿಗಳು ಮತ್ತು ಸತ್ಯನಿಷೇಧಿ-ಗಳಿಗೆ ಮಾತ್ರ ಜನ್ಮ ನೀಡುವರು.

إِنَّكَ إِن تَذَرۡهُمۡ يُضِلُّواْ عِبَادَكَ وَلَا يَلِدُوٓاْ إِلَّا فَاجِرٗا كَفَّارٗا ٢٧

---

28. ನನ್ನ ಪರಿಪಾಲಕನೇ! ನನಗೆ, ನನ್ನ ಮಾತಾಪಿತರಿಗೆ ಮತ್ತು ಸತ್ಯವಿಶ್ವಾಸಿಯಾಗಿ ನನ್ನ ಮನೆಯನ್ನು ಪ್ರವೇಶಿಸಿದವನಿಗೆ ಕ್ಷಮಿಸು. ಸತ್ಯವಿಶ್ವಾಸಿ ಪುರುಷರಿಗೆ ಮತ್ತು ಸ್ತ್ರೀಯರಿಗೆ ಕ್ಷಮಿಸು. ಅಕ್ರಮಿಗಳಿಗೆ ಸರ್ವನಾಶವಲ್ಲದೆ ಇನ್ನೇನೂ ಹೆಚ್ಚಿಸಬೇಡ.”

رَّبِّ ٱغۡفِرۡ لِي وَلِوَٰلِدَيَّ وَلِمَن دَخَلَ بَيۡتِيَ مُؤۡمِنٗا وَلِلۡمُؤۡمِنِينَ وَٱلۡمُؤۡمِنَٰتِۖ وَلَا تَزِدِ ٱلظَّـٰلِمِينَ إِلَّا تَبَارَۢا ٢٨

# 72. ಅಲ್-ಜಿನ್ನ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

---

1. (ಪ್ರವಾದಿಯವರೇ) ಹೇಳಿರಿ: ನಿಶ್ಚಯವಾಗಿಯೂ ಜಿನ್ನ್‌ಗಳಲ್ಲಿ ಸೇರಿದ ಒಂದು ಗುಂಪು (ಕುರ್‌ಆನನ್ನು) ಕಿವಿಗೊಟ್ಟು ಕೇಳಿದರೆಂದು ನನಗೆ ದಿವ್ಯವಾಣಿ ನೀಡಲಾಗಿದೆ. ನಂತರ ಅವರು ಹೇಳಿದರು: “ನಿಶ್ಚಯವಾಗಿಯೂ ನಾವು ಅದ್ಭುತವಾದ ಕುರ್‌ಆನನ್ನು ಕೇಳಿದೆವು.

قُلۡ أُوحِيَ إِلَيَّ أَنَّهُ ٱسۡتَمَعَ نَفَرٞ مِّنَ ٱلۡجِنِّ فَقَالُوٓاْ إِنَّا سَمِعۡنَا قُرۡءَانًا عَجَبٗا ١

---

2. ಅದು ಸನ್ಮಾರ್ಗಕ್ಕೆ ದಾರಿ ತೋರಿಸುತ್ತದೆ. ಆದ್ದರಿಂದ ನಾವು ಅದರಲ್ಲಿ ವಿಶ್ವಾಸವಿಟ್ಟೆವು. ನಾವು ನಮ್ಮ ಪರಿಪಾಲಕನೊಂದಿಗೆ (ಅಲ್ಲಾಹನೊಂದಿಗೆ) ಯಾರನ್ನೂ ಎಂದಿಗೂ ಸಹಭಾಗಿಯಾಗಿ ಮಾಡುವುದಿಲ್ಲ.

يَهۡدِيٓ إِلَى ٱلرُّشۡدِ فَـَٔامَنَّا بِهِۦۖ وَلَن نُّشۡرِكَ بِرَبِّنَآ أَحَدٗا ٢

---

3. ನಿಶ್ಚಯವಾಗಿಯೂ ನಮ್ಮ ಪರಿಪಾಲಕನ (ಅಲ್ಲಾಹನ) ಮಹಿಮೆಯು ಸರ್ವೋನ್ನತವಾಗಿದೆ. ಅವನು ಯಾರನ್ನೂ ತನ್ನ ಮಡದಿ-ಮಕ್ಕಳಾಗಿ ಮಾಡಿಕೊಂಡಿಲ್ಲ.

وَأَنَّهُۥ تَعَٰلَىٰ جَدُّ رَبِّنَا مَا ٱتَّخَذَ صَٰحِبَةٗ وَلَا وَلَدٗا ٣

4. ನಮ್ಮಲ್ಲಿನ ಒಬ್ಬ ಅವಿವೇಕಿಯು (ಇಬ್ಲೀಸ್) ಅಲ್ಲಾಹನ ಬಗ್ಗೆ ಸತ್ಯಕ್ಕೆ ವಿರುದ್ಧವಾದ ಮಾತನ್ನು ಹೇಳುತ್ತಿದ್ದನು.

وَأَنَّهُۥ كَانَ يَقُولُ سَفِيهُنَا عَلَى ٱللَّهِ شَطَطًا ٤

5. ಮನುಷ್ಯರು ಮತ್ತು ಜಿನ್ನ್‌ಗಳು ಅಲ್ಲಾಹನ ಬಗ್ಗೆ ಎಂದೂ ಸುಳ್ಳು ಹೇಳುವುದು ಸಾಧ್ಯವಿಲ್ಲವೆಂದು ನಾವು ಭಾವಿಸಿದ್ದೆವು.

وَأَنَّا ظَنَنَّآ أَن لَّن تَقُولَ ٱلْإِنسُ وَٱلْجِنُّ عَلَى ٱللَّهِ كَذِبًا ٥

6. ಮನುಷ್ಯರಲ್ಲಿ ಕೆಲವರು ಕೆಲವು ಜಿನ್ನ್‌ಗಳೊಡನೆ ಅಭಯ ಕೋರುತ್ತಿದ್ದರು. ಇದರಿಂದ ಅವರು (ಜಿನ್ನ್‌ಗಳು) ತಮ್ಮ ಅತಿರೇಕವನ್ನು ಹೆಚ್ಚಿಸಿಕೊಂಡರು.

وَأَنَّهُۥ كَانَ رِجَالٌ مِّنَ ٱلْإِنسِ يَعُوذُونَ بِرِجَالٍ مِّنَ ٱلْجِنِّ فَزَادُوهُمْ رَهَقًا ٦

7. ಅಲ್ಲಾಹು ಯಾರನ್ನೂ ಪುನಃ ಜೀವ ನೀಡಿ ಎಬ್ಬಿಸುವುದಿಲ್ಲವೆಂದು ನೀವು ಭಾವಿಸಿದಂತೆಯೇ ಮನುಷ್ಯರೂ ಭಾವಿಸಿದ್ದರು.

وَأَنَّهُمْ ظَنُّوا۟ كَمَا ظَنَنتُمْ أَن لَّن يَبْعَثَ ٱللَّهُ أَحَدًا ٧

8. ನಾವು ಆಕಾಶವನ್ನು ಮುಟ್ಟಿದೆವು. ಆಗ ಅದು ಪ್ರಬಲ ಕಾವಲುಗಾರರು ಮತ್ತು ಅಗ್ನಿಜ್ವಾಲೆಗಳಿಂದ ತುಂಬಿದ್ದಾಗಿ ಕಂಡೆವು.

وَأَنَّا لَمَسْنَا ٱلسَّمَآءَ فَوَجَدْنَٰهَا مُلِئَتْ حَرَسًا شَدِيدًا وَشُهُبًا ٨

9. ನಾವು ಇದಕ್ಕಿಂತ ಮೊದಲು (ಆಕಾಶಲೋಕದ) ಮಾತುಗಳಿಗೆ ಕಿವಿಗೊಡಲು ಆಕಾಶದ ವಿವಿಧ ಸ್ಥಳಗಳಲ್ಲಿ ಕುಳಿತುಕೊಳ್ಳು-ತ್ತಿದ್ದೆವು. ಆದರೆ ಈಗ ಯಾರಾದರೂ ಕಿವಿಗೊಟ್ಟು ಕೇಳಿದರೆ, ಅವನಿಗೋಸ್ಕರ ಹೊಂಚು ಹಾಕುತ್ತಿರುವ ಒಂದು ಅಗ್ನಿಜ್ವಾಲೆ-ಯನ್ನು ಕಾಣುವನು.

وَأَنَّا كُنَّا نَقْعُدُ مِنْهَا مَقَٰعِدَ لِلسَّمْعِ ۖ فَمَن يَسْتَمِعِ ٱلْـَٔانَ يَجِدْ لَهُۥ شِهَابًا رَّصَدًا ٩

10. ಭೂಮಿಯಲ್ಲಿರುವವರಿಗೆ ಕೇಡುಕನ್ನು ಉದ್ದೇಶಿಸಲಾಗಿದೆಯೋ, ಅಥವಾ ಅವರ ಪರಿಪಾಲಕನು (ಅಲ್ಲಾಹು) ಅವರಿಗೆ ಒಳಿತನ್ನು ಉದ್ದೇಶಿಸಿದ್ದಾನೋ ಎಂದು ನಮಗೆ ತಿಳಿದಿಲ್ಲ.

وَأَنَّا لَا نَدْرِىٓ أَشَرٌّ أُرِيدَ بِمَن فِى ٱلْأَرْضِ أَمْ أَرَادَ بِهِمْ رَبُّهُمْ رَشَدًا ١٠

11. ನಮ್ಮಲ್ಲಿ ನೀತಿವಂತರಿದ್ದಾರೆ ಮತ್ತು ನಮ್ಮಲ್ಲಿ ಅದಕ್ಕೆ ಹೊರತಾದವರೂ ಇದ್ದಾರೆ. ನಾವು ಹಲವಾರು ಭಿನ್ನ ಮಾರ್ಗಗಳಲ್ಲಿ ಹಂಚಿ ಹೋಗಿದ್ದೇವೆ.

وَأَنَّا مِنَّا ٱلصَّٰلِحُونَ وَمِنَّا دُونَ ذَٰلِكَ ۖ كُنَّا طَرَآئِقَ قِدَدًا ١١

12. ಭೂಮಿಯಲ್ಲಿ ಎಂದಿಗೂ ಅಲ್ಲಾಹನನ್ನು ಅಸಮರ್ಥಗೊ-ಳಿಸಲು ಸಾಧ್ಯವಿಲ್ಲ ಮತ್ತು ಪಲಾಯನ ಮಾಡುವ ಮೂಲಕವೂ ಅವನನ್ನು ಸೋಲಿಸಲು ಸಾಧ್ಯವಿಲ್ಲವೆಂದು ನಮಗೆ ಖಾತ್ರಿಯಾಗಿದೆ.

وَأَنَّا ظَنَنَّآ أَن لَّن نُّعْجِزَ ٱللَّهَ فِى ٱلْأَرْضِ وَلَن نُّعْجِزَهُۥ هَرَبًا ١٢

13. ನಾವು ಸನ್ಮಾರ್ಗವನ್ನು (ಕುರ್‌ಆನನ್ನು) ಆಲಿಸಿದಾಗ ಅದರಲ್ಲಿ ವಿಶ್ವಾಸವಿಟ್ಟೆವು. ಯಾರು ತನ್ನ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ವಿಶ್ವಾಸವಿಡುತ್ತಾನೋ ಅವನು ನಷ್ಟವನ್ನು ಅಥವಾ

وَأَنَّا لَمَّا سَمِعْنَا ٱلْهُدَىٰٓ ءَامَنَّا بِهِۦ ۖ فَمَن يُؤْمِنۢ بِرَبِّهِۦ فَلَا يَخَافُ بَخْسًا وَلَا رَهَقًا ١٣

ಅನ್ಯಾಯವನ್ನು ಭಯಪಡಬೇಕಾಗಿಲ್ಲ.

14. ನಮ್ಮಲ್ಲಿ ಮುಸ್ಲಿಮರಿದ್ದಾರೆ ಮತ್ತು ನಮ್ಮಲ್ಲಿ ಅನ್ಯಾಯ ಮಾಡುವವರೂ ಇದ್ದಾರೆ. ಯಾರು ಮುಸ್ಲಿಮನಾದನೋ ಅವನು ಸನ್ಮಾರ್ಗವನ್ನು ಗುರಿಯಾಗಿಸಿಕೊಂಡನು.

وَأَنَّا مِنَّا ٱلۡمُسۡلِمُونَ وَمِنَّا ٱلۡقَٰسِطُونَۖ فَمَنۡ أَسۡلَمَ فَأُوْلَٰٓئِكَ تَحَرَّوۡاْ رَشَدٗا ١٤

15. ಆದರೆ ಅನ್ಯಾಯ ಮಾಡಿದವರು ಯಾರೋ ಅವರು ನರಕಕ್ಕೆ ಸೌದೆಯಾಗುವರು.

وَأَمَّا ٱلۡقَٰسِطُونَ فَكَانُواْ لِجَهَنَّمَ حَطَبٗا ١٥

16. ಜನರು ನೇರಮಾರ್ಗದಲ್ಲಿ ದೃಢವಾಗಿ ನಿಂತರೆ, ನಾವು ಅವರಿಗೆ ಹೇರಳವಾಗಿ ನೀರನ್ನು ಕುಡಿಯಲು ಕೊಡುತ್ತಿದ್ದೆವು.

وَأَلَّوِ ٱسۡتَقَٰمُواْ عَلَى ٱلطَّرِيقَةِ لَأَسۡقَيۡنَٰهُم مَّآءً غَدَقٗا ١٦

17. ಅದರ ಮೂಲಕ ಅವರನ್ನು ಪರೀಕ್ಷಿಸುವುದಕ್ಕಾಗಿ. ಯಾರು ತನ್ನ ಪರಿಪಾಲಕನ (ಅಲ್ಲಾಹನ) ಸ್ಮರಣೆಯಿಂದ ವಿಮುಖನಾಗುತ್ತಾನೋ ಅವನಿಗೆ ಅಲ್ಲಾಹು ಅತಿಕಠೋರ ಶಿಕ್ಷೆಯನ್ನು ನೀಡುವನು.

لِّنَفۡتِنَهُمۡ فِيهِۚ وَمَن يُعۡرِضۡ عَن ذِكۡرِ رَبِّهِۦ يَسۡلُكۡهُ عَذَابٗا صَعَدٗا ١٧

18. ಮಸೀದಿಗಳೆಲ್ಲವೂ ಅಲ್ಲಾಹನಿಗೆ ಸೇರಿದ್ದು. ಆದ್ದರಿಂದ ನೀವು ಅಲ್ಲಾಹನ ಜೊತೆಗೆ ಯಾರನ್ನೂ ಕರೆದು ಪ್ರಾರ್ಥಿಸಬೇಡಿ.

وَأَنَّ ٱلۡمَسَٰجِدَ لِلَّهِ فَلَا تَدۡعُواْ مَعَ ٱللَّهِ أَحَدٗا ١٨

19. ಅಲ್ಲಾಹನ ದಾಸನು (ಪ್ರವಾದಿ) ಅಲ್ಲಾಹನೊಡನೆ ಪ್ರಾರ್ಥಿಸಲು ನಿಂತಾಗ ಅವರು (ಜಿನ್ನ್‌ಗಳು) ಇನ್ನೇನು ಗುಂಪು ಗುಂಪಾಗಿ ಅವರ ಮೇಲೆ ಮುಗಿಬೀಳುವಂತಿದ್ದರು."

وَأَنَّهُۥ لَمَّا قَامَ عَبۡدُ ٱللَّهِ يَدۡعُوهُ كَادُواْ يَكُونُونَ عَلَيۡهِ لِبَدٗا ١٩

20. ಹೇಳಿರಿ: "ನಾನು ನನ್ನ ಪರಿಪಾಲಕನನ್ನು (ಅಲ್ಲಾಹನನ್ನು) ಮಾತ್ರ ಕರೆದು ಪ್ರಾರ್ಥಿಸುತ್ತೇನೆ. ನಾನು ಅವನೊಂದಿಗೆ ಯಾರನ್ನೂ ಸಹಭಾಗಿಯಾಗಿ ಮಾಡುವುದಿಲ್ಲ."

قُلۡ إِنَّمَآ أَدۡعُواْ رَبِّي وَلَآ أُشۡرِكُ بِهِۦٓ أَحَدٗا ٢٠

21. ಹೇಳಿರಿ: "ನಿಮಗೆ ಯಾವುದೇ ತೊಂದರೆ ಅಥವಾ ಉಪಕಾರ ಮಾಡುವುದು ನನ್ನ ಅಧೀನದಲ್ಲಿಲ್ಲ."

قُلۡ إِنِّي لَآ أَمۡلِكُ لَكُمۡ ضَرّٗا وَلَا رَشَدٗا ٢١

22. ಹೇಳಿರಿ: "ನಿಶ್ಚಯವಾಗಿಯೂ ನನ್ನನ್ನು ಯಾರೂ ಎಂದಿಗೂ ಅಲ್ಲಾಹನಿಂದ ರಕ್ಷಿಸಲಾರರು. ನಾನು ಅವನ ಹೊರತು ಎಲ್ಲಿಯೂ ಆಶ್ರಯವನ್ನು ಪಡೆಯಲಾರೆ.

قُلۡ إِنِّي لَن يُجِيرَنِي مِنَ ٱللَّهِ أَحَدٞ وَلَنۡ أَجِدَ مِن دُونِهِۦ مُلۡتَحَدًا ٢٢

23. ಅಲ್ಲಾಹನ ವಚನಗಳು ಮತ್ತು ಅವನ ಸಂದೇಶಗಳನ್ನು (ಜನರಿಗೆ) ತಲುಪಿಸುವುದು ಮಾತ್ರ ನನ್ನ ಕರ್ತವ್ಯವಾಗಿದೆ." ಯಾರು ಅಲ್ಲಾಹು ಮತ್ತು ಅವನ ಸಂದೇಶವಾಹಕರಿಗೆ ಅವಿಧೇಯತೆ ತೋರುತ್ತಾನೋ ನಿಶ್ಚಯವಾಗಿಯೂ ಅವನಿಗೆ ನರಕಾಗ್ನಿಯಿದೆ. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು.

إِلَّا بَلَٰغٗا مِّنَ ٱللَّهِ وَرِسَٰلَٰتِهِۦۚ وَمَن يَعۡصِ ٱللَّهَ وَرَسُولَهُۥ فَإِنَّ لَهُۥ نَارَ جَهَنَّمَ خَٰلِدِينَ فِيهَآ أَبَدًا ٢٣

24. ಎಲ್ಲಿಯವರೆಗೆಂದರೆ, ಅವರಿಗೆ ವಾಗ್ದಾನ ಮಾಡಲಾಗುವುದನ್ನು

حَتَّىٰٓ إِذَا رَأَوۡاْ مَا يُوعَدُونَ فَسَيَعۡلَمُونَ مَنۡ

| | | |
|---|---|---|
| | ಅವರು ಕಣ್ಣಾರೆ ನೋಡುವ ತನಕ (ಅವರ ಸತ್ಯವನ್ನು ಅಂಗೀ-ಕರಿಸುವುದಿಲ್ಲ). ಆಗ ಅವರು ತಿಳಿದುಕೊಳ್ಳುವರು—ಯಾರ ಸಹಾಯಕ ಅತ್ಯಂತ ದುರ್ಬಲ ಮತ್ತು ಯಾರು ಅತಿ ಕಡಿಮೆ ಸಂಖ್ಯೆಯವರು ಎಂದು. | أَضۡعَفُ نَاصِرٗا وَأَقَلُّ عَدَدٗا ﴿٢٤﴾ |
| 25. | ಹೇಳಿರಿ: "ನಿಮಗೆ ವಾಗ್ದಾನ ಮಾಡಲಾಗುತ್ತಿರುವುದು ಹತ್ತಿರ-ದಲ್ಲಿದೆಯೋ ಅಥವಾ ನನ್ನ ಪರಿಪಾಲಕನು (ಅಲ್ಲಾಹು) ಅದಕ್ಕೆ ದೂರದ ಒಂದು ಅವಧಿಯನ್ನು ನಿಶ್ಚಯಿಸುವನೋ ಎಂದು ನನಗೆ ತಿಳಿದಿಲ್ಲ." | قُلۡ إِنۡ أَدۡرِيٓ أَقَرِيبٞ مَّا تُوعَدُونَ أَمۡ يَجۡعَلُ لَهُۥ رَبِّيٓ أَمَدًا ﴿٢٥﴾ |
| 26. | ಅವನು ಅದೃಶ್ಯವನ್ನು ತಿಳಿದವನು. ಅವನು ತನ್ನ ಅದೃಶ್ಯವನ್ನು ಯಾರಿಗೂ ಪ್ರಕಟಗೊಳಿಸುವುದಿಲ್ಲ. | عَٰلِمُ ٱلۡغَيۡبِ فَلَا يُظۡهِرُ عَلَىٰ غَيۡبِهِۦٓ أَحَدًا ﴿٢٦﴾ |
| 27. | ಅವನು ಇಷ್ಟಪಡುವ ಸಂದೇಶವಾಹಕರಿಗೆ ಹೊರತು. ಆಗಲೂ ಅವನು ಆ ಸಂದೇಶವಾಹಕರ ಮುಂಭಾಗದಲ್ಲಿ ಮತ್ತು ಹಿಂಭಾಗದಲ್ಲಿ ಪಹರೆಗಾರರನ್ನು ನಿಶ್ಚಯಿಸುವನು. | إِلَّا مَنِ ٱرۡتَضَىٰ مِن رَّسُولٖ فَإِنَّهُۥ يَسۡلُكُ مِنۢ بَيۡنِ يَدَيۡهِ وَمِنۡ خَلۡفِهِۦ رَصَدٗا ﴿٢٧﴾ |
| 28. | ಅವರು (ಸಂದೇಶವಾಹಕರು) ಅವರ ಪರಿಪಾಲಕನ (ಅಲ್ಲಾಹನ) ಸಂದೇಶಗಳನ್ನು ತಲುಪಿಸಿದ್ದಾರೆಂದು ಪ್ರವಾದಿಯವರು ತಿಳಿಯುವುದಕ್ಕಾಗಿ. ಅವನು ಅವರ ಬಳಿಯಿರುವುದನ್ನು ಆವರಿಸಿಕೊಂಡಿದ್ದಾನೆ ಮತ್ತು ಎಲ್ಲಾ ವಸ್ತುಗಳನ್ನು ಸರಿಯಾಗಿ ಎಣಿಸಿಟ್ಟಿದ್ದಾನೆ. | لِّيَعۡلَمَ أَن قَدۡ أَبۡلَغُواْ رِسَٰلَٰتِ رَبِّهِمۡ وَأَحَاطَ بِمَا لَدَيۡهِمۡ وَأَحۡصَىٰ كُلَّ شَيۡءٍ عَدَدَۢا ﴿٢٨﴾ |

# 73. ಅಲ್-ಮುಝ್ಝಮ್ಮಿಲ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ಓ ಬಟ್ಟೆಯನ್ನು ಹೊದ್ದುಕೊಂಡವರೇ![1] | يَٰٓأَيُّهَا ٱلۡمُزَّمِّلُ ﴿١﴾ |
| 2. | ರಾತ್ರಿಯಲ್ಲಿ ನಮಾಝ್ ನಿರ್ವಹಿಸಿರಿ. ಆದರೆ ಸ್ವಲ್ಪ ಭಾಗದ ಹೊರತು. | قُمِ ٱلَّيۡلَ إِلَّا قَلِيلٗا ﴿٢﴾ |
| 3. | ರಾತ್ರಿಯ ಅರ್ಧ ಭಾಗ. ಅಥವಾ ಅದಕ್ಕಿಂತ ಸ್ವಲ್ಪ ಕಡಿಮೆ. | نِّصۡفَهُۥٓ أَوِ ٱنقُصۡ مِنۡهُ قَلِيلًا ﴿٣﴾ |
| 4. | ಅಥವಾ ಅದಕ್ಕಿಂತ ಸ್ವಲ್ಪ ಹೆಚ್ಚು.[2] ಕುರ್‌ಆನನ್ನು ನಿಧಾನವಾಗಿ ನಿಲ್ಲಿಸಿ ನಿಲ್ಲಿಸಿ ಪಠಿಸಿರಿ. | أَوۡ زِدۡ عَلَيۡهِ وَرَتِّلِ ٱلۡقُرۡءَانَ تَرۡتِيلًا ﴿٤﴾ |

[1] ಈ ವಚನವು ಅವತೀರ್ಣವಾಗುವಾಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಚಾದರ ಹೊದ್ದು ಮಲಗಿದ್ದರು.

[2] ಇಲ್ಲಿ ಹೇಳಿರುವುದು ರಾತ್ರಿ ನಿರ್ವಹಿಸುವ ತಹಜ್ಜುದ್ ನಮಾಝಿನ ಬಗ್ಗೆ. ಈ ನಮಾಝ್ ರಾತ್ರಿಯ ಅರ್ಧ ಭಾಗ, ಅಥವಾ ಅದಕ್ಕಿಂತ ಸ್ವಲ್ಪ ಕಡಿಮೆ (ಮೂರನೇ ಒಂದು ಭಾಗ) ಅಥವಾ ಅದಕ್ಕಿಂತ ಸ್ವಲ್ಪ ಹೆಚ್ಚು (ಮೂರನೇ ಎರಡು ಭಾಗ) ಆಗಿರುವುದರಲ್ಲಿ ತೊಂದರೆಯಿಲ್ಲ.

5. ನಿಶ್ಚಯವಾಗಿಯೂ ನಾವು ಸದ್ಯವೇ ನಿಮ್ಮ ಮೇಲೆ ಭಾರವಾದ ವಚನವನ್ನು ಅವತೀರ್ಣಗೊಳಿಸುವೆವು.

إِنَّا سَنُلۡقِي عَلَيۡكَ قَوۡلٗا ثَقِيلًا ٥

6. ನಿಶ್ಚಯವಾಗಿಯೂ ರಾತ್ರಿಯಲ್ಲಿ ಎದ್ದೇಳುವುದು ಮನೋದಾರ್ಢ್ಯಕ್ಕೆ ಹೆಚ್ಚು ಸೂಕ್ತವಾಗಿದೆ ಮತ್ತು ಮಾತನ್ನು ಅತ್ಯಂತ ಸರಿಯಾಗಿಸುತ್ತದೆ.

إِنَّ نَاشِئَةَ ٱلَّيۡلِ هِيَ أَشَدُّ وَطۡـٔٗا وَأَقۡوَمُ قِيلًا ٦

7. ನಿಶ್ಚಯವಾಗಿಯೂ ನಿಮಗೆ ಹಗಲಿನಲ್ಲಿ ದೀರ್ಘ ಕೆಲಸವಿದೆ.

إِنَّ لَكَ فِي ٱلنَّهَارِ سَبۡحٗا طَوِيلٗا ٧

8. ನೀವು ನಿಮ್ಮ ಪರಿಪಾಲಕನ (ಅಲ್ಲಾಹನ) ಹೆಸರನ್ನು ಸ್ಮರಿಸಿರಿ. (ಇತರ ಎಲ್ಲಾ ವಿಷಯಗಳಿಂದ ದೂರವಾಗಿ) ನಿಮ್ಮನ್ನು ಸಂಪೂರ್ಣವಾಗಿ ಅವನಿಗೆ ಅರ್ಪಿಸಿಕೊಳ್ಳಿರಿ.

وَٱذۡكُرِ ٱسۡمَ رَبِّكَ وَتَبَتَّلۡ إِلَيۡهِ تَبۡتِيلٗا ٨

9. ಅವನು ಪೂರ್ವ ಮತ್ತು ಪಶ್ಚಿಮದ ಪರಿಪಾಲಕನು. ಅವನ ಹೊರತು ಆರಾಧನೆಗೆ ಅರ್ಹರಾದ ಬೇರೆ ದೇವರಿಲ್ಲ. ಅವನನ್ನು ನಿಮ್ಮ ಕಾರ್ಯನಿರ್ವಾಹಕನಾಗಿ ಮಾಡಿಕೊಳ್ಳಿ.

رَّبُّ ٱلۡمَشۡرِقِ وَٱلۡمَغۡرِبِ لَآ إِلَٰهَ إِلَّا هُوَ فَٱتَّخِذۡهُ وَكِيلٗا ٩

10. ಅವರು ಹೇಳುತ್ತಿರುವುದನ್ನು ತಾಳ್ಮೆಯಿಂದ ಸಹಿಸಿರಿ ಮತ್ತು ಅತ್ಯಂತ ಮನೋಹರವಾಗಿ ಅವರಿಂದ ದೂರವಾಗಿರಿ.

وَٱصۡبِرۡ عَلَىٰ مَا يَقُولُونَ وَٱهۡجُرۡهُمۡ هَجۡرٗا جَمِيلٗا ١٠

11. ನನ್ನನ್ನು ಮತ್ತು ಸುಖಾಡಂಬರಗಳ ಜನರಾದ ಆ ನಿಷೇಧಿಗಳನ್ನು ಬಿಟ್ಟು ಬಿಡಿ.[1] ಅವರಿಗೆ ಸ್ವಲ್ಪ ಕಾಲಾವಕಾಶ ನೀಡಿರಿ.

وَذَرۡنِي وَٱلۡمُكَذِّبِينَ أُوْلِي ٱلنَّعۡمَةِ وَمَهِّلۡهُمۡ قَلِيلًا ١١

12. ನಿಶ್ಚಯವಾಗಿಯೂ ನಮ್ಮ ಬಳಿ ಬಲಿಷ್ಠ ಬೇಡಿಗಳು ಮತ್ತು ಜ್ವಲಿಸುವ ಅಗ್ನಿಯಿದೆ.

إِنَّ لَدَيۡنَآ أَنكَالٗا وَجَحِيمٗا ١٢

13. ಉಸಿರುಗಟ್ಟಿಸುವ ಆಹಾರ ಮತ್ತು ಯಾತನಾಮಯ ಶಿಕ್ಷೆಯಿದೆ.

وَطَعَامٗا ذَا غُصَّةٖ وَعَذَابًا أَلِيمٗا ١٣

14. ಭೂಮಿ ಮತ್ತು ಪರ್ವತಗಳು ರಭಸದಿಂದ ಅಲುಗಾಡುವ ದಿನ. ಪರ್ವತಗಳು ಹರಿಯುವ ಮರಳ ರಾಶಿಯಂತಾಗುವ ದಿನ.

يَوۡمَ تَرۡجُفُ ٱلۡأَرۡضُ وَٱلۡجِبَالُ وَكَانَتِ ٱلۡجِبَالُ كَثِيبٗا مَّهِيلًا ١٤

15. ನಿಶ್ಚಯವಾಗಿಯೂ ನಾವು ನಿಮ್ಮ ಮೇಲೆ ಸಾಕ್ಷಿಯಾಗಿ ಒಬ್ಬ ಸಂದೇಶವಾಹಕರನ್ನು ಕಳುಹಿಸಿದ್ದೇವೆ. ಫರೋಹನ ಬಳಿಗೆ ಒಬ್ಬ ಸಂದೇಶವಾಹಕರನ್ನು ಕಳುಹಿಸಿದಂತೆ.

إِنَّآ أَرۡسَلۡنَآ إِلَيۡكُمۡ رَسُولٗا شَٰهِدًا عَلَيۡكُمۡ كَمَآ أَرۡسَلۡنَآ إِلَىٰ فِرۡعَوۡنَ رَسُولٗا ١٥

16. ಆದರೆ ಫರೋಹನು ಆ ಸಂದೇಶವಾಹಕರನ್ನು ಅನುಸರಿಸಲಿಲ್ಲ. ಆದ್ದರಿಂದ ನಾವು ಅವನನ್ನು ಬಲಿಷ್ಠ ಹಿಡಿತದೊಂದಿಗೆ ಹಿಡಿದೆವು.

فَعَصَىٰ فِرۡعَوۡنُ ٱلرَّسُولَ فَأَخَذۡنَٰهُ أَخۡذٗا وَبِيلٗا ١٦

17. ನೀವು ನಿಷೇಧಿಸುವುದಾದರೆ ಮಕ್ಕಳನ್ನು ನೆರೆತ ಕೂದಲಿನವರಾಗಿ ಮಾಡುವ[2] ಆ ದಿನ ನೀವು ಹೇಗೆ ತಾನೇ ರಕ್ಷಣೆ ಪಡೆಯುವಿರಿ?

فَكَيۡفَ تَتَّقُونَ إِن كَفَرۡتُمۡ يَوۡمٗا يَجۡعَلُ ٱلۡوِلۡدَٰنَ شِيبًا ١٧

---

[1] ಅಂದರೆ ಅವರನ್ನು ನನಗೆ ಬಿಟ್ಟು ಬಿಡಿ. ನಾನು ಅವರನ್ನು ನೋಡಿಕೊಳ್ಳುತ್ತೇನೆ.

[2] ಅಂದರೆ ಅಂತ್ಯದಿನದ ಭಯವಿಹ್ವಲತೆಯಿಂದ ಮಕ್ಕಳು ವೃದ್ಧರಂತಾಗಿ ಬಿಡುವರು.

18. ಆ ದಿನ ಆಕಾಶವು ಒಡೆಯುವುದು. ಅಲ್ಲಾಹನ ವಾಗ್ದಾನವು ನೆರವೇರಿಯೇ ತೀರುತ್ತದೆ.

ٱلسَّمَآءُ مُنفَطِرٌۢ بِهِۦۚ كَانَ وَعۡدُهُۥ مَفۡعُولًا ١٨

19. ನಿಶ್ಚಯವಾಗಿಯೂ ಇದೊಂದು ಉಪದೇಶವಾಗಿದೆ. ಆದ್ದರಿಂದ ಇಷ್ಟವಿರುವವರು ತಮ್ಮ ಪರಿಪಾಲಕನ (ಅಲ್ಲಾಹನ) ಕಡೆಗೆ ಮಾರ್ಗವನ್ನು ಸ್ವೀಕರಿಸಿಕೊಳ್ಳಲಿ.

إِنَّ هَٰذِهِۦ تَذۡكِرَةٞۖ فَمَن شَآءَ ٱتَّخَذَ إِلَىٰ رَبِّهِۦ سَبِيلًا ١٩

20. ನಿಶ್ಚಯವಾಗಿಯೂ ನೀವು ಮತ್ತು ನಿಮ್ಮ ಜೊತೆಯಲ್ಲಿರುವ ಒಂದು ಗುಂಪು ಜನರು ಕೆಲವೊಮ್ಮೆ ರಾತ್ರಿಯ ಮೂರನೇ ಎರಡು ಭಾಗ, ಕೆಲವೊಮ್ಮೆ ರಾತ್ರಿಯ ಅರ್ಧ ಭಾಗ ಮತ್ತು ಕೆಲವೊಮ್ಮೆ ರಾತ್ರಿಯ ಮೂರನೇ ಒಂದು ಭಾಗದವರೆಗೆ ನಿಂತು ನಮಾಝ್ ಮಾಡುತ್ತೀರಿ ಎಂದು ನಿಮ್ಮ ಪರಿಪಾಲಕನಿಗೆ (ಅಲ್ಲಾಹನಿಗೆ) ಬಹಳ ಚೆನ್ನಾಗಿ ತಿಳಿದಿದೆ. ಅಲ್ಲಾಹನೇ ರಾತ್ರಿ-ಹಗಲುಗಳ (ದೀರ್ಘವನ್ನು) ನಿರ್ಣಯಿಸುವವನು. ಅದನ್ನು ಪೂರ್ಣವಾಗಿ ನೆರವೇರಿಸಲು ನಿಮಗೆ ಸಾಧ್ಯವಿಲ್ಲವೆಂದು ಅವನಿಗೆ ತಿಳಿದಿದೆ. ಆದ್ದರಿಂದ ಅವನು ನಿಮ್ಮ ಮೇಲೆ ಅನುಕಂಪ ತೋರಿದ್ದಾನೆ. ಆದ್ದರಿಂದ ನಿಮಗೆ ಎಷ್ಟು ಕುರ್‌ಆನ್ ಪಠಿಸಲು ಸಾಧ್ಯವೋ ಅಷ್ಟು ಪಠಿಸಿರಿ. ನಿಮ್ಮಲ್ಲಿ ರೋಗಿಗಳಿದ್ದಾರೆ, ಅಲ್ಲಾಹನ ಔದಾರ್ಯವನ್ನು ಹುಡುಕುತ್ತಾ (ಉಪಜೀವನಕ್ಕಾಗಿ) ಭೂಮಿಯಲ್ಲಿ ಸಂಚರಿಸುವವರಿದ್ದಾರೆ ಮತ್ತು ಅಲ್ಲಾಹನ ಮಾರ್ಗದಲ್ಲಿ ಹೋರಾಡುವವರಿದ್ದಾರೆ ಎಂದು ಅವನಿಗೆ ಚೆನ್ನಾಗಿ ತಿಳಿದಿದೆ. ಆದ್ದರಿಂದ ನಿಮಗೆ ಎಷ್ಟು ಕುರ್‌ಆನ್ ಪಠಿಸಲು ಸಾಧ್ಯವೋ ಅಷ್ಟು ಪಠಿಸಿರಿ. ನಮಾಝ್ ಸಂಸ್ಥಾಪಿಸಿರಿ ಹಾಗೂ ಝಕಾತ್ ನೀಡಿರಿ. ಅಲ್ಲಾಹನಿಗೆ ಅತ್ಯುತ್ತಮವಾದ ಸಾಲವನ್ನು ನೀಡಿರಿ. ನೀವು ನಿಮಗಾಗಿ ಏನೆಲ್ಲಾ ಒಳಿತುಗಳನ್ನು ಮುಂದಕ್ಕೆ ಕಳುಹಿಸುತ್ತೀರೋ ಅದನ್ನು ನೀವು ಅಲ್ಲಾಹನ ಬಳಿ ಅತ್ಯುತ್ತಮವಾಗಿ ಮತ್ತು ಅತಿದೊಡ್ಡ ಪ್ರತಿಫಲವಿರುವುದಾಗಿ ಕಾಣುವಿರಿ. ಅಲ್ಲಾಹನಲ್ಲಿ ಕ್ಷಮೆಯಾಚಿಸಿರಿ. ನಿಶ್ಚಯವಾಗಿಯೂ ಅಲ್ಲಾಹು ಕ್ಷಮಿಸುವವನು ಮತ್ತು ದಯೆ ತೋರುವವನಾಗಿದ್ದಾನೆ.

إِنَّ رَبَّكَ يَعۡلَمُ أَنَّكَ تَقُومُ أَدۡنَىٰ مِن ثُلُثَيِ ٱلَّيۡلِ وَنِصۡفَهُۥ وَثُلُثَهُۥ وَطَآئِفَةٞ مِّنَ ٱلَّذِينَ مَعَكَۚ وَٱللَّهُ يُقَدِّرُ ٱلَّيۡلَ وَٱلنَّهَارَۚ عَلِمَ أَن لَّن تُحۡصُوهُ فَتَابَ عَلَيۡكُمۡۖ فَٱقۡرَءُواْ مَا تَيَسَّرَ مِنَ ٱلۡقُرۡءَانِۚ عَلِمَ أَن سَيَكُونُ مِنكُم مَّرۡضَىٰ وَءَاخَرُونَ يَضۡرِبُونَ فِي ٱلۡأَرۡضِ يَبۡتَغُونَ مِن فَضۡلِ ٱللَّهِ وَءَاخَرُونَ يُقَٰتِلُونَ فِي سَبِيلِ ٱللَّهِۖ فَٱقۡرَءُواْ مَا تَيَسَّرَ مِنۡهُۚ وَأَقِيمُواْ ٱلصَّلَوٰةَ وَءَاتُواْ ٱلزَّكَوٰةَ وَأَقۡرِضُواْ ٱللَّهَ قَرۡضًا حَسَنٗاۚ وَمَا تُقَدِّمُواْ لِأَنفُسِكُم مِّنۡ خَيۡرٖ تَجِدُوهُ عِندَ ٱللَّهِ هُوَ خَيۡرٗا وَأَعۡظَمَ أَجۡرٗاۚ وَٱسۡتَغۡفِرُواْ ٱللَّهَۖ إِنَّ ٱللَّهَ غَفُورٞ رَّحِيمُۢ ٢٠

# 74. ಅಲ್-ಮುದ್ದಸ್ಸಿರ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಓ ಹೊದಿಕೆಯನ್ನು ಹೊದ್ದುಕೊಂಡವರೇ![1] | يَٰٓأَيُّهَا ٱلۡمُدَّثِّرُ ١
2. ಎದ್ದೇಳಿರಿ ಮತ್ತು ಎಚ್ಚರಿಕೆ ನೀಡಿರಿ. | قُمۡ فَأَنذِرۡ ٢
3. ನಿಮ್ಮ ಪರಿಪಾಲಕನ (ಅಲ್ಲಾಹನ) ಮಹಾತ್ಮೆಯನ್ನು ಕೊಂಡಾಡಿರಿ. | وَرَبَّكَ فَكَبِّرۡ ٣
4. ನಿಮ್ಮ ಬಟ್ಟೆಗಳನ್ನು ಶುದ್ಧವಾಗಿಡಿರಿ. | وَثِيَابَكَ فَطَهِّرۡ ٤
5. ಅಶುದ್ಧವನ್ನು ವರ್ಜಿಸಿರಿ. | وَٱلرُّجۡزَ فَٱهۡجُرۡ ٥
6. ಉಪಕಾರ ಮಾಡಿ ಹೆಚ್ಚು ಗಳಿಸುವ ವ್ಯಾಮೋಹ ಬಿಟ್ಟುಬಿಡಿ. | وَلَا تَمۡنُن تَسۡتَكۡثِرُ ٦
7. ನಿಮ್ಮ ಪರಿಪಾಲಕನ (ಅಲ್ಲಾಹನ) ಮಾರ್ಗದಲ್ಲಿ ತಾಳ್ಮೆಯಿಂದಿರಿ. | وَلِرَبِّكَ فَٱصۡبِرۡ ٧
8. ಕಹಳೆಯಲ್ಲಿ ಊದಲಾಗುವಾಗ. | فَإِذَا نُقِرَ فِي ٱلنَّاقُورِ ٨
9. ಆ ದಿನವು ಅತ್ಯಂತ ಕಠಿಣ ದಿನವಾಗಿರುವುದು. | فَذَٰلِكَ يَوۡمَئِذٖ يَوۡمٌ عَسِيرٌ ٩
10. ಅದು ಸತ್ಯನಿಷೇಧಿಗಳಿಗೆ ಸುಗಮವಾಗಿರುವುದಿಲ್ಲ. | عَلَى ٱلۡكَٰفِرِينَ غَيۡرُ يَسِيرٖ ١٠
11. ನನ್ನನ್ನು ಹಾಗೂ ನಾನು ಏಕಾಂಗಿಯಾಗಿ ಸೃಷ್ಟಿಸಿದವನನ್ನು ಬಿಟ್ಟುಬಿಡಿ.[2] | ذَرۡنِي وَمَنۡ خَلَقۡتُ وَحِيدٗا ١١
12. ನಾನು ಅವನಿಗೆ ಹೇರಳ ಐಶ್ವರ್ಯವನ್ನು ನೀಡಿದೆನು. | وَجَعَلۡتُ لَهُۥ مَالٗا مَّمۡدُودٗا ١٢
13. ಸನ್ನದ್ಧರಾಗಿರುವ ಗಂಡು ಮಕ್ಕಳನ್ನು ನೀಡಿದೆನು. | وَبَنِينَ شُهُودٗا ١٣
14. ನಾನು ಅವನಿಗೆ ಅನೇಕ ಅನುಕೂಲತೆಗಳನ್ನು ಮಾಡಿಕೊಟ್ಟೆನು. | وَمَهَّدتُّ لَهُۥ تَمۡهِيدٗا ١٤
15. ಆದರೂ ನಾನು ಅವನಿಗೆ ಇನ್ನೂ ಹೆಚ್ಚು ನೀಡಬೇಕೆಂದು ಅವನು ಹಾತೊರೆಯುತ್ತಾನೆ. | ثُمَّ يَطۡمَعُ أَنۡ أَزِيدَ ١٥

[1] ಪ್ರವಾದಿಯವರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಮೊಟ್ಟಮೊದಲು ಸೂರ ಅಲಕ್‌ನ ಪ್ರಥಮ 5 ವಚನಗಳು ಅವತೀರ್ಣವಾದವು. ನಂತರ ದೀರ್ಘ ಸಮಯದ ತನಕ ಅವರಿಗೆ ಕುರ್‌ಆನ್ ಅವತೀರ್ಣವಾಗಲಿಲ್ಲ. ಒಂದಿನ ಇದ್ದಕ್ಕಿದ್ದಂತೆ ಹಿರಾ ಗುಹೆಯಲ್ಲಿ ನೋಡಿದ ಅದೇ ದೇವದೂತರು ಆಕಾಶ ಮತ್ತು ಭೂಮಿಯ ಮಧ್ಯೆ ಸಂಪೂರ್ಣ ದಿಗಂತವನ್ನು ಮುಚ್ಚುವ ರೀತಿಯಲ್ಲಿ ಕುಳಿತಿರುವುದನ್ನು ಕಂಡರು. ಅವರು ಭಯದಿಂದ ಮನೆಗೆ ಓಡಿ ನನ್ನನ್ನು ಹೊದಿಯಿರಿ; ನನ್ನನ್ನು ಹೊದಿಯಿರಿ ಎಂದರು. ಅವರನ್ನು ಹೊದಿಕೆಯಿಂದ ಹೊದಿಯಲಾಯಿತು. ಆಗ ಈ ವಚನಗಳು ಅವತೀರ್ಣವಾದವು.

[2] ಅಂದರೆ ಅವನ ವಿಷಯವನ್ನು ನಾನು ನೋಡಿಕೊಳ್ಳುವೆನು. ಅವನು ಅವನ ತಾಯಿಯ ಹೊಟ್ಟೆಯಿಂದ ಹೊರಬರುವಾಗ ಅವನಲ್ಲಿ ಐಶ್ವರ್ಯ ಅಥವಾ ಮಕ್ಕಳಿರಲಿಲ್ಲ. ಇವೆಲ್ಲವೂ ನಾನು ಅವನಿಗೆ ನೀಡಿದ ಅನುಗ್ರಹಗಳು. ಆದರೂ ಅವನು ಈಗ ನನ್ನ ವಿರುದ್ಧ ಸೆಟೆದು ನಿಂತಿದ್ದಾನೆ. — ಇಲ್ಲಿ ಹೇಳಲಾಗಿರುವುದು ಕುರೈಷಿ ಮುಖಂಡ ವಲೀದ್ ಬಿನ್ ಮುಗೀರ ಎಂಬವನ ಬಗ್ಗೆಯಾಗಿದೆ.

| | | |
|---|---|---|
| 16. | ಖಂಡಿತ ಇಲ್ಲ. ಅವನು ನಮ್ಮ ವಚನಗಳ ವಿರೋಧಿಯಾಗಿದ್ದಾನೆ. | كَلَّآ إِنَّهُۥ كَانَ لِأٓيَٰتِنَا عَنِيدٗا ١٦ |
| 17. | ಸದ್ಯವೇ ನಾನು ಅವನನ್ನು ಒಂದು ಪ್ರಯಾಸಕರ ಏರುವಿಕೆಯನ್ನು ಏರುವಂತೆ ಮಾಡುವೆನು.[1] | سَأُرۡهِقُهُۥ صَعُودًا ١٧ |
| 18. | ಅವನು ಯೋಚಿಸಿದನು ಮತ್ತು ನಿರ್ಣಯಿಸಿದನು. | إِنَّهُۥ فَكَّرَ وَقَدَّرَ ١٨ |
| 19. | ಅವನು ನಾಶವಾಗಲಿ! ಅವನು ಹೇಗೆ ನಿರ್ಣಯಿಸಿದನು? | فَقُتِلَ كَيۡفَ قَدَّرَ ١٩ |
| 20. | ಪುನಃ ಅವನು ನಾಶವಾಗಲಿ! ಅವನು ಹೇಗೆ ನಿರ್ಣಯಿಸಿದನು? | ثُمَّ قُتِلَ كَيۡفَ قَدَّرَ ٢٠ |
| 21. | ನಂತರ ಅವನು ನೋಡಿದನು. | ثُمَّ نَظَرَ ٢١ |
| 22. | ನಂತರ ಅವನು ಹುಬ್ಬುಗಂಟಿಕ್ಕಿದನು ಮತ್ತು ಮುಖವನ್ನು ಸಿಂಡರಿಸಿದನು. | ثُمَّ عَبَسَ وَبَسَرَ ٢٢ |
| 23. | ನಂತರ ಅವನು ಹಿಂದಡಿಯಿಟ್ಟನು ಮತ್ತು ಅಹಂಕಾರ ತೋರಿದನು. | ثُمَّ أَدۡبَرَ وَٱسۡتَكۡبَرَ ٢٣ |
| 24. | ನಂತರ ಅವನು ಹೇಳಿದನು: “ಇದು (ಕುರ್‌ಆನ್) ನಕಲು ಮಾಡಲಾದ ಮಾಟಗಾರಿಕೆಯಲ್ಲದೆ ಇನ್ನೇನೂ ಅಲ್ಲ. | فَقَالَ إِنۡ هَٰذَآ إِلَّا سِحۡرٞ يُؤۡثَرُ ٢٤ |
| 25. | ಇದು ಕೇವಲ ಒಬ್ಬ ಮನುಷ್ಯನ ಮಾತಾಗಿದೆ.” | إِنۡ هَٰذَآ إِلَّا قَوۡلُ ٱلۡبَشَرِ ٢٥ |
| 26. | ನಾನು ಸದ್ಯವೇ ಅವನನ್ನು ಸಖರ್‌ಗೆ (ನರಕಕ್ಕೆ) ಹಾಕುವೆನು. | سَأُصۡلِيهِ سَقَرَ ٢٦ |
| 27. | ಸಖರ್ ಏನೆಂದು ನಿಮಗೇನು ಗೊತ್ತು? | وَمَآ أَدۡرَىٰكَ مَا سَقَرُ ٢٧ |
| 28. | ಅದು ಏನನ್ನೂ ಉಳಿಸುವುದಿಲ್ಲ ಮತ್ತು ಬಿಟ್ಟುಬಿಡುವುದಿಲ್ಲ. | لَا تُبۡقِي وَلَا تَذَرُ ٢٨ |
| 29. | ಅದು ಚರ್ಮವನ್ನು ಸುಟ್ಟು ಕರಕಲಾಗಿಸುತ್ತದೆ. | لَوَّاحَةٞ لِّلۡبَشَرِ ٢٩ |
| 30. | ಅದರ ಮೇಲೆ ಹತ್ತೊಂಬತ್ತು (ದೇವದೂತರುಗಳು) ಇದ್ದಾರೆ. | عَلَيۡهَا تِسۡعَةَ عَشَرَ ٣٠ |
| 31. | ನಾವು ನರಕದ ಕಾವಲುಗಾರರಾಗಿ ಕೇವಲ ದೇವದೂತರುಗಳನ್ನು ಮಾತ್ರ ನಿಶ್ಚಯಿಸಿದ್ದೇವೆ. ನಾವು ಅವರ ಸಂಖ್ಯೆಯನ್ನು ಸತ್ಯನಿಷೇಧಿಗಳಿಗೆ ಒಂದು ಪರೀಕ್ಷೆಯಾಗಿ ಮಾಡಿದ್ದೇವೆ.[2] ಇದೇಕೆಂದರೆ, ಗ್ರಂಥ ನೀಡಲಾದವರಿಗೆ ದೃಢವಿಶ್ವಾಸ ಉಂಟಾಗಲೆಂದು[3] ಮತ್ತು | وَمَا جَعَلۡنَآ أَصۡحَٰبَ ٱلنَّارِ إِلَّا مَلَٰٓئِكَةٗۙ وَمَا جَعَلۡنَا عِدَّتَهُمۡ إِلَّا فِتۡنَةٗ لِّلَّذِينَ كَفَرُواْ لِيَسۡتَيۡقِنَ ٱلَّذِينَ أُوتُواْ ٱلۡكِتَٰبَ وَيَزۡدَادَ ٱلَّذِينَ |

[1] ಅಂದರೆ ಅವನಿಗೆ ಸಹಿಸಲು ಅಸಾಧ್ಯವಾದ ಶಿಕ್ಷೆಯನ್ನು ನೀಡುವೆನು. ಇತರ ಕೆಲವು ವ್ಯಾಖ್ಯಾನಕಾರರು ಹೇಳುವಂತೆ ನರಕದಲ್ಲಿ ಒಂದು ಅಗ್ನಿಯ ಪರ್ವತವಿದ್ದು ಈತ ಅದನ್ನು ಏರುತ್ತಲೇ ಇರುವನು.

[2] ನರಕದ ಕಾವಲುಗಾರರ ಸಂಖ್ಯೆ 19 ಎಂಬ ವಚನ ಅವತೀರ್ಣವಾದಾಗ, ಸತ್ಯನಿಷೇಧಿಗಳ ಮುಖಂಡ ಅಬೂಜಹಲ್ ತನ್ನ ಜನರನ್ನು ಕರೆದು ವ್ಯಂಗ್ಯವಾಗಿ ಹೇಳಿದ: ನಿಮ್ಮಲ್ಲಿ ಪ್ರತಿ ಹತ್ತು ಜನರಿಗೆ ಒಬ್ಬೊಬ್ಬ ದೇವದೂತನನ್ನು ಸೋಲಿಸಲು ಸಾಧ್ಯವಿಲ್ಲವೇ? ಆಗ ಈ ವಚನವು ಅವತೀರ್ಣವಾಯಿತು.

[3] ಈ ವಿಷಯವು ತೌರಾತ್ ಮತ್ತು ಇಂಜೀಲ್‌ನಲ್ಲಿ ಕೂಡ ಇರುವುದರಿಂದ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು

ءَامَنُوٓاْ إِيمَٰنًا وَلَا يَرۡتَابَ ٱلَّذِينَ أُوتُواْ ٱلۡكِتَٰبَ وَٱلۡمُؤۡمِنُونَ وَلِيَقُولَ ٱلَّذِينَ فِي قُلُوبِهِم مَّرَضٞ وَٱلۡكَٰفِرُونَ مَاذَآ أَرَادَ ٱللَّهُ بِهَٰذَا مَثَلٗاۚ كَذَٰلِكَ يُضِلُّ ٱللَّهُ مَن يَشَآءُ وَيَهۡدِي مَن يَشَآءُۚ وَمَا يَعۡلَمُ جُنُودَ رَبِّكَ إِلَّا هُوَۚ وَمَا هِيَ إِلَّا ذِكۡرَىٰ لِلۡبَشَرِ ﴿٣١﴾

ಸತ್ಯವಿಶ್ವಾಸಿಗಳ ವಿಶ್ವಾಸವು ಇನ್ನಷ್ಟು ಹೆಚ್ಚಾಗಲೆಂದು. ಅದೇ ರೀತಿ ಗ್ರಂಥ ನೀಡಲಾದವರು ಹಾಗೂ ಸತ್ಯವಿಶ್ವಾಸಿಗಳು ಸಂಶಯ ಪಡದಿರಲೆಂದು ಮತ್ತು ಹೃದಯದಲ್ಲಿ ರೋಗವಿರುವವರು ಹಾಗೂ ಸತ್ಯನಿಷೇಧಿಗಳು, “ಈ ವಿವರಣೆಯಿಂದ ಅಲ್ಲಾಹು ಉದ್ದೇಶಿಸುವುದೇನು?” ಎಂದು ಕೇಳಲೆಂದು. ಈ ರೀತಿ ಅಲ್ಲಾಹು ಅವನು ಇಚ್ಛಿಸಿದವರನ್ನು ದಾರಿತಪ್ಪಿಸುತ್ತಾನೆ ಮತ್ತು ಅವನು ಇಚ್ಛಿಸಿದವರಿಗೆ ಸನ್ಮಾರ್ಗ ತೋರಿಸುತ್ತಾನೆ. ನಿಮ್ಮ ಪರಿಪಾಲಕನ (ಅಲ್ಲಾಹನ) ಸೈನ್ಯವನ್ನು ಅವನ ಹೊರತು ಯಾರೂ ತಿಳಿದಿಲ್ಲ. ಅದು (ನರಕ) ಮನುಷ್ಯರಿಗೆ ಒಂದು ಉಪದೇಶವಲ್ಲದೆ ಇನ್ನೇನೂ ಅಲ್ಲ.

كَلَّا وَٱلۡقَمَرِ ﴿٣٢﴾

32. ಇಲ್ಲ; ಚಂದ್ರನ ಮೇಲಾಣೆ!

وَٱلَّيۡلِ إِذۡ أَدۡبَرَ ﴿٣٣﴾

33. ರಾತ್ರಿಯ ಮೇಲಾಣೆ! ಅದು ಹಿಂದಕ್ಕೆ ಸರಿಯುವಾಗ.

وَٱلصُّبۡحِ إِذَآ أَسۡفَرَ ﴿٣٤﴾

34. ಬೆಳಗ್ಗಿನ ಮೇಲಾಣೆ! ಅದು ಬೆಳಗುವಾಗ.

إِنَّهَا لَإِحۡدَى ٱلۡكُبَرِ ﴿٣٥﴾

35. ನಿಶ್ಚಯವಾಗಿಯೂ ಅದು (ನರಕ) ಮಹಾ ವಿಷಯಗಳಲ್ಲಿ ಒಂದಾಗಿದೆ.

نَذِيرٗا لِّلۡبَشَرِ ﴿٣٦﴾

36. ಮನುಷ್ಯರಿಗೆ ಒಂದು ಮುನ್ನೆಚ್ಚರಿಕೆಯಾಗಿದೆ.

لِمَن شَآءَ مِنكُمۡ أَن يَتَقَدَّمَ أَوۡ يَتَأَخَّرَ ﴿٣٧﴾

37. ಅಂದರೆ ನಿಮ್ಮಲ್ಲಿ ಮುಂದಕ್ಕೆ ಬರಲು ಅಥವಾ ಹಿಂದೆಯೇ ಉಳಿಯಲು ಇಚ್ಛಿಸುವವರಿಗೆ.

كُلُّ نَفۡسِۭ بِمَا كَسَبَتۡ رَهِينَةٌ ﴿٣٨﴾

38. ಪ್ರತಿಯೊಬ್ಬ ವ್ಯಕ್ತಿಯೂ ತನ್ನ ಕರ್ಮಗಳಿಗೆ ಅಡಮಾನವಾಗಿದ್ದಾನೆ.[1]

إِلَّآ أَصۡحَٰبَ ٱلۡيَمِينِ ﴿٣٩﴾

39. ಬಲಭಾಗದ ಜನರ ಹೊರತು.

فِي جَنَّٰتٖ يَتَسَآءَلُونَ ﴿٤٠﴾

40. ಅವರು ಸ್ವರ್ಗೋದ್ಯಾನಗಳಲ್ಲಿ (ಕುಳಿತು) ಪರಸ್ಪರ ವಿಚಾರಿಸುವರು.

عَنِ ٱلۡمُجۡرِمِينَ ﴿٤١﴾

41. ಅಪರಾಧಿಗಳ ಕುರಿತು.

مَا سَلَكَكُمۡ فِي سَقَرَ ﴿٤٢﴾

42. ನಿಮ್ಮನ್ನು ನರಕದಲ್ಲಿ ಬೀಳಿಸಿದ್ದೇನು?

قَالُواْ لَمۡ نَكُ مِنَ ٱلۡمُصَلِّينَ ﴿٤٣﴾

43. ಅವರು ಹೇಳುವರು: “ನಾವು ನಮಾಝ್ ಮಾಡುವವರಾಗಿರಲಿಲ್ಲ.

وَلَمۡ نَكُ نُطۡعِمُ ٱلۡمِسۡكِينَ ﴿٤٤﴾

44. ನಾವು ಬಡವರಿಗೆ ಆಹಾರ ನೀಡುತ್ತಿರಲಿಲ್ಲ.

---

ಶಾಂತಿಯಿರಲಿ) ಹೇಳಿದ್ದು ಸತ್ಯವೆಂದು ಗ್ರಂಥದವರಿಗೆ ದೃಢವಿಶ್ವಾಸ ಉಂಟಾಗಲಿದೆ.

[1] ಅಂದರೆ ಒಂದೋ ಅವನ ಕರ್ಮಗಳು ಅವನನ್ನು ಸ್ವರ್ಗಕ್ಕೆ ಸೇರಿಸುತ್ತವೆ ಅಥವಾ ಅವನ ಕರ್ಮಗಳು ಅವನನ್ನು ನರಕಕ್ಕೆ ಸೇರಿಸುತ್ತವೆ.

| | | |
|---|---|---|
| 45. | ನಾವು ಅನಗತ್ಯ ಮಾತುಕತೆ ನಡೆಸುವವರ (ಸತ್ಯನಿಷೇಧಿಗಳ) ಜೊತೆಗೆ ಅನಗತ್ಯ ಮಾತುಗಳಲ್ಲಿ ತಲ್ಲೀನರಾಗಿದ್ದೆವು. | وَكُنَّا نَخُوضُ مَعَ ٱلْخَآئِضِينَ ﴿٤٥﴾ |
| 46. | ನಾವು ಪ್ರತಿಫಲದ ದಿನವನ್ನು ನಿಷೇಧಿಸುತ್ತಿದ್ದೆವು. | وَكُنَّا نُكَذِّبُ بِيَوْمِ ٱلدِّينِ ﴿٤٦﴾ |
| 47. | ಎಲ್ಲಿಯವರೆಗೆಂದರೆ ನಮಗೆ ಸಾವು ಬರುವ ತನಕ." | حَتَّىٰٓ أَتَىٰنَا ٱلْيَقِينُ ﴿٤٧﴾ |
| 48. | ಅವರಿಗೆ ಶಿಫಾರಸುಗಾರರ ಶಿಫಾರಸು ಪ್ರಯೋಜನಪಡುವುದಿಲ್ಲ. | فَمَا تَنفَعُهُمْ شَفَٰعَةُ ٱلشَّٰفِعِينَ ﴿٤٨﴾ |
| 49. | ಅವರಿಗೇನಾಗಿದೆ? ಅವರೇಕೆ ಉಪದೇಶದಿಂದ ವಿಮುಖರಾಗುತ್ತಿದ್ದಾರೆ? | فَمَا لَهُمْ عَنِ ٱلتَّذْكِرَةِ مُعْرِضِينَ ﴿٤٩﴾ |
| 50. | ಅವರು ಗಾಬರಿಗೊಂಡ ಕತ್ತೆಗಳೋ ಎಂಬಂತೆ. | كَأَنَّهُمْ حُمُرٌ مُّسْتَنفِرَةٌ ﴿٥٠﴾ |
| 51. | ಸಿಂಹವನ್ನು ಕಂಡು ಪಲಾಯನ ಮಾಡಿದ. | فَرَّتْ مِن قَسْوَرَةٍۭ ﴿٥١﴾ |
| 52. | ಅಲ್ಲ, ವಾಸ್ತವವಾಗಿ ಅವರಲ್ಲಿ ಪ್ರತಿಯೊಬ್ಬನೂ ತನಗೆ ತೆರೆದಿಟ್ಟ ಧರ್ಮಗ್ರಂಥಗಳು ಸಿಗಬೇಕೆಂದು ಬಯಸುತ್ತಾನೆ. | بَلْ يُرِيدُ كُلُّ ٱمْرِئٍ مِّنْهُمْ أَن يُؤْتَىٰ صُحُفًا مُّنَشَّرَةً ﴿٥٢﴾ |
| 53. | ಇಲ್ಲ; ವಾಸ್ತವವಾಗಿ ಅವರು ಪರಲೋಕವನ್ನು ಭಯಪಡುವುದಿಲ್ಲ. | كَلَّا ۖ بَل لَّا يَخَافُونَ ٱلْءَاخِرَةَ ﴿٥٣﴾ |
| 54. | ಖಂಡಿತ ಇಲ್ಲ. ನಿಶ್ಚಯವಾಗಿಯೂ ಇದು (ಕುರ್‌ಆನ್) ಉಪದೇಶವಾಗಿದೆ. | كَلَّآ إِنَّهُۥ تَذْكِرَةٌ ﴿٥٤﴾ |
| 55. | ಇಷ್ಟವಿರುವವರು ಅದರಿಂದ ಉಪದೇಶವನ್ನು ಪಡೆದುಕೊಳ್ಳಲಿ. | فَمَن شَآءَ ذَكَرَهُۥ ﴿٥٥﴾ |
| 56. | ಆದರೆ ಅಲ್ಲಾಹು ಇಚ್ಛಿಸಿದ ಹೊರತು ಅವರು ಅದರಿಂದ ಉಪದೇಶ ಪಡೆಯುವುದಿಲ್ಲ. ಅವನು ಭಯಪಡಲು ಅರ್ಹನಾಗಿದ್ದಾನೆ ಮತ್ತು ಕ್ಷಮಿಸಲು ಅರ್ಹನಾಗಿದ್ದಾನೆ. | وَمَا يَذْكُرُونَ إِلَّآ أَن يَشَآءَ ٱللَّهُ ۚ هُوَ أَهْلُ ٱلتَّقْوَىٰ وَأَهْلُ ٱلْمَغْفِرَةِ ﴿٥٦﴾ |

# 75. ಅಲ್-ಕಿಯಾಮ

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ನಾನು ಪುನರುತ್ಥಾನದ ದಿನದ ಮೇಲೆ ಆಣೆ ಮಾಡುತ್ತೇನೆ. | لَآ أُقۡسِمُ بِيَوۡمِ ٱلۡقِيَٰمَةِ ١ |
| 2. | ನಾನು ಆಕ್ಷೇಪಿಸುವ ಮನಸ್ಸಿನ ಮೇಲೆ ಆಣೆ ಮಾಡುತ್ತೇನೆ. | وَلَآ أُقۡسِمُ بِٱلنَّفۡسِ ٱللَّوَّامَةِ ٢ |
| 3. | ಮನುಷ್ಯನು ಭಾವಿಸುತ್ತಿದ್ದಾನೆಯೇ ನಾವು ಅವನ ಮೂಳೆಗಳನ್ನು ಜೋಡಿಸಲಾರೆವು ಎಂದು? | أَيَحۡسَبُ ٱلۡإِنسَٰنُ أَلَّن نَّجۡمَعَ عِظَامَهُۥ ٣ |
| 4. | ಹೌದು! ನಮಗೆ ಅವನ ಬೆರಳ ತುದಿಗಳನ್ನು ಕೂಡ ಸರಿಪಡಿಸುವ ಸಾಮರ್ಥ್ಯವಿದೆ. | بَلَىٰ قَٰدِرِينَ عَلَىٰٓ أَن نُّسَوِّيَ بَنَانَهُۥ ٤ |
| 5. | ಆದರೆ ಮನುಷ್ಯನು ಮುಂದೆಯೂ ಕೂಡ ಅವಿಧೇಯನಾಗಿಯೇ ಇರಲು ಬಯಸುತ್ತಾನೆ. | بَلۡ يُرِيدُ ٱلۡإِنسَٰنُ لِيَفۡجُرَ أَمَامَهُۥ ٥ |
| 6. | ಅವನು ಕೇಳುತ್ತಾನೆ: “ಪುನರುತ್ಥಾನ ದಿನ ಯಾವಾಗ ಸಂಭವಿಸುತ್ತದೆ?” | يَسۡـَٔلُ أَيَّانَ يَوۡمُ ٱلۡقِيَٰمَةِ ٦ |
| 7. | ದೃಷ್ಟಿಯು ಕೋರೈಸುವಾಗ. | فَإِذَا بَرِقَ ٱلۡبَصَرُ ٧ |
| 8. | ಚಂದ್ರ ಪ್ರಕಾಶ ರಹಿತವಾಗುವಾಗ. | وَخَسَفَ ٱلۡقَمَرُ ٨ |
| 9. | ಸೂರ್ಯ-ಚಂದ್ರರನ್ನು ಜೋಡಿಸಲಾಗುವಾಗ.[1] | وَجُمِعَ ٱلشَّمۡسُ وَٱلۡقَمَرُ ٩ |
| 10. | ಅಂದು ಮನುಷ್ಯನು ಕೇಳುವನು: “ಪಲಾಯನ ಮಾಡಲು ಸ್ಥಳವೆಲ್ಲಿದೆ?” | يَقُولُ ٱلۡإِنسَٰنُ يَوۡمَئِذٍ أَيۡنَ ٱلۡمَفَرُّ ١٠ |
| 11. | ಇಲ್ಲ, ಯಾವುದೇ ರಕ್ಷಣೆಯೂ ಇಲ್ಲ. | كَلَّا لَا وَزَرَ ١١ |
| 12. | ಅಂದು ನಿನ್ನ ವಾಸ್ತವ್ಯವು ನಿನ್ನ ಪರಿಪಾಲಕನ (ಅಲ್ಲಾಹನ) ಕಡೆಗೇ ಆಗಿದೆ. | إِلَىٰ رَبِّكَ يَوۡمَئِذٍ ٱلۡمُسۡتَقَرُّ ١٢ |
| 13. | ಅಂದು ಮನುಷ್ಯನಿಗೆ ಅವನು ಮುಂದಕ್ಕೆ ಕಳುಹಿಸಿರುವ ಮತ್ತು ಹಿಂದೆ ಬಿಟ್ಟಿರುವ ಕರ್ಮಗಳ ಬಗ್ಗೆ ತಿಳಿಸಲಾಗುವುದು. | يُنَبَّؤُاْ ٱلۡإِنسَٰنُ يَوۡمَئِذِۭ بِمَا قَدَّمَ وَأَخَّرَ ١٣ |
| 14. | ಅಲ್ಲ, ವಾಸ್ತವವಾಗಿ ಮನುಷ್ಯನು ಅವನ ವಿರುದ್ಧವೇ ಸಾಕ್ಷಿಯಾಗಿದ್ದಾನೆ. | بَلِ ٱلۡإِنسَٰنُ عَلَىٰ نَفۡسِهِۦ بَصِيرَةٞ ١٤ |

[1] ಅಂದರೆ ಬೆಳಕು ರಹಿತವಾಗುವುದರಲ್ಲಿ ಸೂರ್ಯ ಮತ್ತು ಚಂದ್ರ ಸಮಾನರಾಗುವಾಗ. ಎರಡೂ ಖಗೋಳ ಕಾಯಗಳ ಬೆಳಕು ನಂದಿ ಹೋಗಲಿದೆ ಎಂದರ್ಥ.

15. ಅವನು ಎಷ್ಟೇ ನೆಪಗಳನ್ನು ಒಡ್ಡಿದರೂ ಸಹ. وَلَوۡ أَلۡقَىٰ مَعَاذِيرَهُۥ ١٥

16. (ಪ್ರವಾದಿಯವರೇ) ನೀವು ಕುರ್‌ಆನನ್ನು ಆತುರದಿಂದ ಕಂಠಪಾಠ ಮಾಡಲು ನಿಮ್ಮ ನಾಲಗೆಯನ್ನು ಅಲುಗಾಡಿಸಬೇಡಿ. لَا تُحَرِّكۡ بِهِۦ لِسَانَكَ لِتَعۡجَلَ بِهِۦٓ ١٦

17. ನಿಶ್ಚಯವಾಗಿಯೂ ಅದನ್ನು ಕ್ರೋಢೀಕರಿಸುವುದು ಮತ್ತು ನೀವು ಅದನ್ನು ಪಠಿಸುವಂತೆ ಮಾಡುವುದು ನಮ್ಮ ಹೊಣೆಯಾಗಿದೆ.[1] إِنَّ عَلَيۡنَا جَمۡعَهُۥ وَقُرۡءَانَهُۥ ١٧

18. ನಾವು ಅದನ್ನು ಪಠಿಸಿದರೆ ನೀವು ಆ ಪಠಣವನ್ನು ಹಿಂಬಾಲಿಸಿರಿ. فَإِذَا قَرَأۡنَٰهُ فَٱتَّبِعۡ قُرۡءَانَهُۥ ١٨

19. ನಂತರ ಅದನ್ನು ವಿವರಿಸಿಕೊಡುವುದು ನಮ್ಮ ಹೊಣೆಯಾಗಿದೆ. ثُمَّ إِنَّ عَلَيۡنَا بَيَانَهُۥ ١٩

20. ಇಲ್ಲ, ನೀವು ಇಹಲೋಕವನ್ನು ಪ್ರೀತಿಸುತ್ತೀರಿ. كَلَّا بَلۡ تُحِبُّونَ ٱلۡعَاجِلَةَ ٢٠

21. ಪರಲೋಕವನ್ನು ತೊರೆಯುತ್ತೀರಿ. وَتَذَرُونَ ٱلۡأٓخِرَةَ ٢١

22. ಅಂದು ಬಹಳಷ್ಟು ಮುಖಗಳು ಪ್ರಸನ್ನವಾಗಿರುವುವು. وُجُوهٞ يَوۡمَئِذٖ نَّاضِرَةٌ ٢٢

23. ಅದರ ಪರಿಪಾಲಕನ (ಅಲ್ಲಾಹನ) ಕಡೆಗೆ ನೋಡುತ್ತಿರುವುವು. إِلَىٰ رَبِّهَا نَاظِرَةٞ ٢٣

24. ಅಂದು ಬಹಳಷ್ಟು ಮುಖಗಳು ವಿಷಣ್ಣವಾಗಿರುವುವು. وَوُجُوهٞ يَوۡمَئِذِۭ بَاسِرَةٞ ٢٤

25. ಅವರೊಡನೆ ಬೆನ್ನು ತುಂಡಾಗಿಸುವ ರೀತಿಯಲ್ಲಿ ವ್ಯವಹರಿಸಲಾಗುವುದೆಂದು ಅವರು ಭಾವಿಸುವರು. تَظُنُّ أَن يُفۡعَلَ بِهَا فَاقِرَةٞ ٢٥

26. ಇಲ್ಲ, ಆತ್ಮವು ಕೊರಳ ಮೂಳೆಗೆ ತಲುಪಿದಾಗ. كَلَّآ إِذَا بَلَغَتِ ٱلتَّرَاقِيَ ٢٦

27. “ಮಂತ್ರಿಸುವವರು ಯಾರಾದರೂ ಇದ್ದಾರೆಯೇ?” ಎಂದು ಕೇಳಲಾಗುವಾಗ. وَقِيلَ مَنۡۜ رَاقٖ ٢٧

28. ಅದು ಅಗಲಿಕೆಯ ಸಮಯವೆಂದು ಅವನಿಗೆ ಖಾತ್ರಿಯಾದಾಗ. وَظَنَّ أَنَّهُ ٱلۡفِرَاقُ ٢٨

29. ಕಣಕಾಲು ಕಣಕಾಲಿನೊಂದಿಗೆ ಸುತ್ತುವಾಗ. وَٱلۡتَفَّتِ ٱلسَّاقُ بِٱلسَّاقِ ٢٩

30. ಅಂದು (ಅವನನ್ನು) ನಿಮ್ಮ ಪರಿಪಾಲಕನ (ಅಲ್ಲಾಹನ) ಬಳಿಗೆ ಸಾಗಿಸಲಾಗುವುದು. إِلَىٰ رَبِّكَ يَوۡمَئِذٍ ٱلۡمَسَاقُ ٣٠

31. ಅವನು ವಿಶ್ವಾಸವಿಡಲಿಲ್ಲ, ನಮಾಝ್ ಕೂಡ ಮಾಡಲಿಲ್ಲ. فَلَا صَدَّقَ وَلَا صَلَّىٰ ٣١

32. ಆದರೆ ಅವನು ನಿಷೇಧಿಸಿದನು ಮತ್ತು ಮುಖ ತಿರುಗಿಸಿ ನಡೆದನು. وَلَٰكِن كَذَّبَ وَتَوَلَّىٰ ٣٢

[1] ದೇವದೂತರು ಕುರ್‌ಆನನ್ನು ಓದಿಕೊಡುವಾಗ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅದನ್ನು ಕಂಠಪಾಠ ಮಾಡಲು ಅವರ ಜೊತೆಗೇ ಓದುತ್ತಿದ್ದರು. ಏಕೆಂದರೆ ಅದರಿಂದ ಏನಾದರೂ ಮರೆತು ಬಿಡಬಹುದೇ ಎಂಬ ಆತಂಕ ಅವರನ್ನು ಕಾಡುತ್ತಿತ್ತು. ಆದರೆ ಅಲ್ಲಾಹು ಇಲ್ಲಿ ಅದನ್ನು ವಿರೋಧಿಸುತ್ತಿದ್ದಾನೆ. ಕಂಠಪಾಠ ಮಾಡುವುದಕ್ಕಾಗಿ ನೀವು ಅವರ ಜೊತೆಗೇ ಓದಬೇಡಿ. ಬದಲಿಗೆ ಅದನ್ನು ಗಮನವಿಟ್ಟು ಕೇಳಿ. ಅದನ್ನು ನಿಮ್ಮ ಹೃದಯದಲ್ಲಿ ಸಂಗ್ರಹಿಸಿಡುವುದು ಅಲ್ಲಾಹನ ಹೊಣೆಯಾಗಿದೆ.

33. ನಂತರ ಎದೆಯುಬ್ಬಿಸಿ ತನ್ನ ಮನೆಯವರ ಕಡೆಗೆ ಹೊರಟನು.

ثُمَّ ذَهَبَ إِلَىٰٓ أَهۡلِهِۦ يَتَمَطَّىٰٓ ٣٣

34. ನಿನಗೆ ವಿನಾಶ ಕಾದಿದೆ. ನಿನಗೆ ವಿನಾಶ ಕಾದಿದೆ.

أَوۡلَىٰ لَكَ فَأَوۡلَىٰ ٣٤

35. ಪುನಃ ನಿನಗೆ ವಿನಾಶ ಕಾದಿದೆ. ನಿನಗೆ ವಿನಾಶ ಕಾದಿದೆ.

ثُمَّ أَوۡلَىٰ لَكَ فَأَوۡلَىٰٓ ٣٥

36. ಮನುಷ್ಯನು ಭಾವಿಸುತ್ತಾನೆಯೇ ಅವನನ್ನು ಸುಮ್ಮನೆ ಬಿಟ್ಟುಬಿಡಲಾಗುವುದೆಂದು?

أَيَحۡسَبُ ٱلۡإِنسَٰنُ أَن يُتۡرَكَ سُدًى ٣٦

37. ಅವನು ಸ್ರವಿಸಲಾದ ವೀರ್ಯದ ಒಂದು ಬಿಂದುವಾಗಿರಲಿಲ್ಲವೇ?

أَلَمۡ يَكُ نُطۡفَةٗ مِّن مَّنِيّٖ يُمۡنَىٰ ٣٧

38. ನಂತರ ಅವನು ರಕ್ತಪಿಂಡವಾದನು. ನಂತರ ಅಲ್ಲಾಹು ಅವನನ್ನು ಸೃಷ್ಟಿಸಿದನು ಮತ್ತು ಸರಿಪಡಿಸಿದನು.

ثُمَّ كَانَ عَلَقَةٗ فَخَلَقَ فَسَوَّىٰ ٣٨

39. ನಂತರ ಅವನಿಂದ ಗಂಡು ಮತ್ತು ಹೆಣ್ಣು ಎಂಬ ಜೋಡಿಯನ್ನು ಮಾಡಿದನು.

فَجَعَلَ مِنۡهُ ٱلزَّوۡجَيۡنِ ٱلذَّكَرَ وَٱلۡأُنثَىٰٓ ٣٩

40. ಅಂತಹವನು ಸತ್ತವರಿಗೆ ಜೀವ ನೀಡುವ ಸಾಮರ್ಥ್ಯವನ್ನು ಹೊಂದಿಲ್ಲವೇ?

أَلَيۡسَ ذَٰلِكَ بِقَٰدِرٍ عَلَىٰٓ أَن يُحۡـِۧيَ ٱلۡمَوۡتَىٰ ٤٠

# 76. ಅಲ್-ಇನ್ಸಾನ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಮನುಷ್ಯನು ಪ್ರಸ್ತಾಪಯೋಗ್ಯವೇ ಆಗಿರದಿದ್ದ ಒಂದು ಕಾಲವು ಅವನ ಮೇಲೆ ಕಳೆದುಹೋಗಿಲ್ಲವೇ?

هَلۡ أَتَىٰ عَلَى ٱلۡإِنسَٰنِ حِينٞ مِّنَ ٱلدَّهۡرِ لَمۡ يَكُن شَيۡـٔٗا مَّذۡكُورًا ١

2. ನಿಶ್ಚಯವಾಗಿಯೂ ನಾವು ಮನುಷ್ಯನನ್ನು ಸಮ್ಮಿಶ್ರ ವೀರ್ಯದಿಂದ ಸೃಷ್ಟಿಸಿದೆವು. ಅವನನ್ನು ಪರೀಕ್ಷಿಸುವುದಕ್ಕಾಗಿ. ನಾವು ಅವನನ್ನು ಕೇಳುವವನಾಗಿ ಮತ್ತು ನೋಡುವವನಾಗಿ ಮಾಡಿದೆವು.

إِنَّا خَلَقۡنَا ٱلۡإِنسَٰنَ مِن نُّطۡفَةٍ أَمۡشَاجٖ نَّبۡتَلِيهِ فَجَعَلۡنَٰهُ سَمِيعَۢا بَصِيرًا ٢

3. ನಿಶ್ಚಯವಾಗಿಯೂ ನಾವು ಅವನಿಗೆ ಮಾರ್ಗವನ್ನು ತೋರಿಸಿದೆವು. ಅವನು ಒಂದೋ ಕೃತಜ್ಞನಾಗಲೆಂದು ಅಥವಾ ಕೃತಘ್ನನಾಗಲೆಂದು.

إِنَّا هَدَيۡنَٰهُ ٱلسَّبِيلَ إِمَّا شَاكِرٗا وَإِمَّا كَفُورًا ٣

4. ನಿಶ್ಚಯವಾಗಿಯೂ ನಾವು ಸತ್ಯನಿಷೇಧಿಗಳಿಗೆ ಸಂಕೋಲೆಗಳನ್ನು, ಬೇಡಿಗಳನ್ನು ಮತ್ತು ಜ್ವಲಿಸುವ ನರಕವನ್ನು ಸಿದ್ಧಗೊಳಿಸಿದ್ದೇವೆ.

إِنَّآ أَعۡتَدۡنَا لِلۡكَٰفِرِينَ سَلَٰسِلَاْ وَأَغۡلَٰلٗا وَسَعِيرًا ٤

5. ನಿಶ್ಚಯವಾಗಿಯೂ ನೀತಿವಂತರು ಒಂದು ಲೋಟದಿಂದ ಕುಡಿಯುವರು. ಅದರ ಮಿಶ್ರಣವು ಕರ್ಪೂರವಾಗಿರುವುದು.

إِنَّ ٱلۡأَبۡرَارَ يَشۡرَبُونَ مِن كَأۡسٖ كَانَ مِزَاجُهَا كَافُورًا ٥

6. ಅದೊಂದು ಚಿಲುಮೆಯ ನೀರಾಗಿದೆ. ಅಲ್ಲಾಹನ ದಾಸರು ಅದರಿಂದ ಕುಡಿಯುವರು. ಅವರು (ಬಯಸಿದ ಸ್ಥಳದಲ್ಲಿ) ಅದನ್ನು ಚಿಮ್ಮಿ ಹರಿಯುವಂತೆ ಮಾಡುವರು.

عَيۡنٗا يَشۡرَبُ بِهَا عِبَادُ ٱللَّهِ يُفَجِّرُونَهَا تَفۡجِيرٗا ٦

7. ಅವರು (ಅಲ್ಲಾಹನ ದಾಸರು) ಯಾರೆಂದರೆ, ಹರಕೆಗಳನ್ನು ಈಡೇರಿಸುವವರು ಮತ್ತು ನಾಲ್ಕೂ ಕಡೆ ಕೆಡುಕು ಹರಡುವ ಒಂದು ದಿನವನ್ನು ಭಯಪಡುವವರು.

يُوفُونَ بِٱلنَّذۡرِ وَيَخَافُونَ يَوۡمٗا كَانَ شَرُّهُۥ مُسۡتَطِيرٗا ٧

8. ಅವರು ಆಹಾರದ ಮೇಲೆ ಪ್ರೀತಿಯಿದ್ದೂ ಸಹ ಅದನ್ನು ಬಡವರಿಗೆ, ಅನಾಥರಿಗೆ ಮತ್ತು ಖೈದಿಗಳಿಗೆ ನೀಡುವವರು.

وَيُطۡعِمُونَ ٱلطَّعَامَ عَلَىٰ حُبِّهِۦ مِسۡكِينٗا وَيَتِيمٗا وَأَسِيرًا ٨

9. (ಅವರು ಹೇಳುತ್ತಾರೆ): "ನಾವು ನಿಮಗೆ ಆಹಾರ ನೀಡುವುದು ಅಲ್ಲಾಹನ ಸಂಪ್ರೀತಿಗಾಗಿ ಮಾತ್ರ. ನಾವು ನಿಮ್ಮಿಂದ ಯಾವುದೇ ಪ್ರತಿಫಲ ಅಥವಾ ಕೃತಜ್ಞತೆಯನ್ನು ಬಯಸುವುದಿಲ್ಲ.

إِنَّمَا نُطۡعِمُكُمۡ لِوَجۡهِ ٱللَّهِ لَا نُرِيدُ مِنكُمۡ جَزَآءٗ وَلَا شُكُورًا ٩

10. ನಾವು ನಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ಆ ಕಠೋರ ಮತ್ತು ಆತಂಕಕಾರಿ ದಿನವನ್ನು ಭಯಪಡುತ್ತೇವೆ."

إِنَّا نَخَافُ مِن رَّبِّنَا يَوۡمًا عَبُوسٗا قَمۡطَرِيرٗا ١٠

11. ಆದ್ದರಿಂದ ಅಲ್ಲಾಹು ಅವರನ್ನು ಆ ದಿನದ ಕೆಡುಕಿನಿಂದ ಕಾಪಾಡುವನು ಮತ್ತು ಅವರಿಗೆ ತಾಜಾತನ ಹಾಗೂ ಸಂತೋಷವನ್ನು ದಯಪಾಲಿಸುವನು.

فَوَقَىٰهُمُ ٱللَّهُ شَرَّ ذَٰلِكَ ٱلۡيَوۡمِ وَلَقَّىٰهُمۡ نَضۡرَةٗ وَسُرُورٗا ١١

12. ಅವರು ತಾಳ್ಮೆ ವಹಿಸಿದ್ದಕ್ಕೆ ಪ್ರತಿಫಲವಾಗಿ ಅವರಿಗೆ ಸ್ವರ್ಗವನ್ನು ಮತ್ತು ರೇಷ್ಮೆ ಉಡುಪುಗಳನ್ನು ನೀಡುವನು.

وَجَزَىٰهُم بِمَا صَبَرُواْ جَنَّةٗ وَحَرِيرٗا ١٢

13. ಅವರು ಅಲ್ಲಿ ಸುಖಾಸನಗಳಲ್ಲಿ ಒರಗಿ ಕುಳಿತಿರುವರು. ಅವರು ಅಲ್ಲಿ ಬಿಸಿಲಿನ ಬೇಗೆಯನ್ನು ಅಥವಾ ಚಳಿಯ ಕಠೋರತೆಯನ್ನು ನೋಡಲಾರರು.

مُّتَّكِـِٔينَ فِيهَا عَلَى ٱلۡأَرَآئِكِۖ لَا يَرَوۡنَ فِيهَا شَمۡسٗا وَلَا زَمۡهَرِيرٗا ١٣

14. ಆ ಸ್ವರ್ಗಗಳ ನೆರಳು ಅವರ ಮೇಲೆ ಚಾಚಿಕೊಂಡಿರುವುದು. ಅದರ ಹಣ್ಣುಗಳು ಮತ್ತು ಗೊಂಚಲುಗಳು ಬಾಗಿಕೊಂಡಿರುವುವು.

وَدَانِيَةً عَلَيۡهِمۡ ظِلَٰلُهَا وَذُلِّلَتۡ قُطُوفُهَا تَذۡلِيلٗا ١٤

15. ಅವರ ಸುತ್ತಲೂ ಬೆಳ್ಳಿಯ ಪಾತ್ರೆಗಳು ಮತ್ತು ಸ್ಫಟಿಕದ ಲೋಟಗಳೊಂದಿಗೆ (ಪರಿಚಾರಕರು) ಸುತ್ತುತ್ತಿರುವರು.

وَيُطَافُ عَلَيۡهِم بِـَٔانِيَةٖ مِّن فِضَّةٖ وَأَكۡوَابٖ كَانَتۡ قَوَارِيرَا۠ ١٥

16. ಅವು ಬೆಳ್ಳಿಯ ಸ್ಫಟಿಕಗಳಾಗಿವೆ. ಅವರು ಅದನ್ನು ಸರಿಯಾದ ಅಳತೆಯಿಂದ ನಿರ್ಣಯಿಸುವರು.

قَوَارِيرَاْ مِن فِضَّةٖ قَدَّرُوهَا تَقۡدِيرٗا ١٦

17. ಅಲ್ಲಿ ಅವರಿಗೆ ಒಂದು ಲೋಟವನ್ನು ಕುಡಿಯಲು ನೀಡಲಾಗುವುದು. ಅದರ ಮಿಶ್ರಣವು ಶುಂಠಿಯದ್ದಾಗಿರುವುದು.

وَيُسۡقَوۡنَ فِيهَا كَأۡسٗا كَانَ مِزَاجُهَا زَنجَبِيلًا ١٧

| | | |
|---|---|---|
| 18. | ಸ್ವರ್ಗದ ಸಲ್ಸಬೀಲ್ ಎಂಬ ಹೆಸರಿನ ಒಂದು ಚಿಲುಮೆಯಿಂದ. | عَيۡنٗا فِيهَا تُسَمَّىٰ سَلۡسَبِيلٗا ١٨ |
| 19. | ಅವರ ಸುತ್ತಲೂ ಚಿರಂಜೀವಿಗಳಾದ ಹುಡುಗರು ಸುತ್ತುತ್ತಿರುವರು. ನೀವು ಅವರನ್ನು ನೋಡಿದರೆ ಅವರನ್ನು ಚದುರಿದ ಮುತ್ತುಗಳೆಂದು ಭಾವಿಸುವಿರಿ. | ۞وَيَطُوفُ عَلَيۡهِمۡ وِلۡدَٰنٞ مُّخَلَّدُونَ إِذَا رَأَيۡتَهُمۡ حَسِبۡتَهُمۡ لُؤۡلُؤٗا مَّنثُورٗا ١٩ |
| 20. | ನೀವು ಅಲ್ಲಿ ಯಾವ ಕಡೆಗೆ ದೃಷ್ಟಿ ಹರಿಸಿದರೂ ಅಲ್ಲಿ ಐಶ್ವರ್ಯಗಳನ್ನು ಮತ್ತು ಮಹಾ ಸಾಮ್ರಾಜ್ಯವನ್ನು ಕಾಣುವಿರಿ. | وَإِذَا رَأَيۡتَ ثَمَّ رَأَيۡتَ نَعِيمٗا وَمُلۡكٗا كَبِيرًا ٢٠ |
| 21. | ಅವರ ಮೇಲೆ ಹಸಿರು ಬಣ್ಣದ ನಯವಾದ ಮತ್ತು ದಪ್ಪಗಿನ ರೇಷ್ಮೆ ಉಡುಪುಗಳಿರುವುವು. ಅವರಿಗೆ ಬೆಳ್ಳಿಯ ಕಡಗಗಳನ್ನು ತೊಡಿಸಲಾಗುವುದು. ಅವರ ಪರಿಪಾಲಕನು (ಅಲ್ಲಾಹು) ಅವರಿಗೆ ಶುದ್ಧವಾದ ಪಾನೀಯವನ್ನು ಕುಡಿಸುವನು. | عَٰلِيَهُمۡ ثِيَابُ سُندُسٍ خُضۡرٞ وَإِسۡتَبۡرَقٞۖ وَحُلُّوٓاْ أَسَاوِرَ مِن فِضَّةٖ وَسَقَىٰهُمۡ رَبُّهُمۡ شَرَابٗا طَهُورًا ٢١ |
| 22. | (ಅವರೊಡನೆ ಹೇಳಲಾಗುವುದು): "ಇವೆಲ್ಲವೂ ನಿಮಗಿರುವ ಪ್ರತಿಫಲವಾಗಿವೆ. ನಿಮ್ಮ ಪರಿಶ್ರಮಗಳು ಶ್ಲಾಘನಾರ್ಹವಾಗಿವೆ." | إِنَّ هَٰذَا كَانَ لَكُمۡ جَزَآءٗ وَكَانَ سَعۡيُكُم مَّشۡكُورًا ٢٢ |
| 23. | ನಿಶ್ಚಯವಾಗಿಯೂ ನಾವು ನಿಮಗೆ ಈ ಕುರ್‌ಆನನ್ನು ಹಂತ ಹಂತವಾಗಿ ಅವತೀರ್ಣಗೊಳಿಸಿದ್ದೇವೆ. | إِنَّا نَحۡنُ نَزَّلۡنَا عَلَيۡكَ ٱلۡقُرۡءَانَ تَنزِيلٗا ٢٣ |
| 24. | ಆದ್ದರಿಂದ ನೀವು ನಿಮ್ಮ ಪರಿಪಾಲಕನ (ಅಲ್ಲಾಹನ) ತೀರ್ಪನ್ನು ತಾಳ್ಮೆಯಿಂದ ಕಾಯುತ್ತಿರಿ. ಅವರಲ್ಲಿ ಯಾವುದೇ ಪಾಪಿಯನ್ನು ಅಥವಾ ಕೃತಜ್ಞತೆಯಿಲ್ಲದವನನ್ನು ಅನುಸರಿಸಬೇಡಿ. | فَٱصۡبِرۡ لِحُكۡمِ رَبِّكَ وَلَا تُطِعۡ مِنۡهُمۡ ءَاثِمًا أَوۡ كَفُورٗا ٢٤ |
| 25. | ಮುಂಜಾನೆ ಮತ್ತು ಸಂಜೆ ನಿಮ್ಮ ಪರಿಪಾಲಕನ (ಅಲ್ಲಾಹನ) ಹೆಸರನ್ನು ಸ್ಮರಿಸಿರಿ. | وَٱذۡكُرِ ٱسۡمَ رَبِّكَ بُكۡرَةٗ وَأَصِيلٗا ٢٥ |
| 26. | ರಾತ್ರಿಯಲ್ಲಿ ಅವನಿಗೆ ಸಾಷ್ಟಾಂಗ ಮಾಡಿರಿ ಮತ್ತು ದೀರ್ಘ ರಾತ್ರಿಯ ತನಕ ಅವನ ಪರಿಶುದ್ಧತೆಯನ್ನು ಕೊಂಡಾಡಿರಿ. | وَمِنَ ٱلَّيۡلِ فَٱسۡجُدۡ لَهُۥ وَسَبِّحۡهُ لَيۡلٗا طَوِيلًا ٢٦ |
| 27. | ನಿಶ್ಚಯವಾಗಿಯೂ ಇವರು ಇಹಲೋಕವನ್ನು ಇಷ್ಟಪಡುತ್ತಾರೆ ಮತ್ತು ಭಾರವಾದ ಒಂದು ದಿನವನ್ನು ತಮ್ಮ ಬೆನ್ನ ಹಿಂದೆ ತೊರೆಯುತ್ತಾರೆ. | إِنَّ هَٰٓؤُلَآءِ يُحِبُّونَ ٱلۡعَاجِلَةَ وَيَذَرُونَ وَرَآءَهُمۡ يَوۡمٗا ثَقِيلٗا ٢٧ |
| 28. | ನಾವು ಅವರನ್ನು ಸೃಷ್ಟಿಸಿದ್ದೇವೆ ಮತ್ತು ಅವರ ದೇಹ ರಚನೆಯನ್ನು ಸದೃಢಗೊಳಿಸಿದ್ದೇವೆ. ನಾವು ಇಚ್ಛಿಸಿದರೆ ಅವರ ಬದಲಿಗೆ ಅವರಂತಿರುವವರನ್ನು ತರುತ್ತೇವೆ. | نَّحۡنُ خَلَقۡنَٰهُمۡ وَشَدَدۡنَآ أَسۡرَهُمۡۖ وَإِذَا شِئۡنَا بَدَّلۡنَآ أَمۡثَٰلَهُمۡ تَبۡدِيلًا ٢٨ |
| 29. | ನಿಶ್ಚಯವಾಗಿಯೂ ಇದೊಂದು ಉಪದೇಶವಾಗಿದೆ. ಆದ್ದರಿಂದ ಇಚ್ಛೆಯುಳ್ಳವನು ತನ್ನ ಪರಿಪಾಲಕನ (ಅಲ್ಲಾಹನ) ಕಡೆಗಿರುವ | إِنَّ هَٰذِهِۦ تَذۡكِرَةٞۖ فَمَن شَآءَ ٱتَّخَذَ إِلَىٰ رَبِّهِۦ سَبِيلٗا ٢٩ |

ಮಾರ್ಗವನ್ನು ಸ್ವೀಕರಿಸಲಿ.

30. ಅಲ್ಲಾಹು ಇಚ್ಛಿಸದೆ ನೀವು ಇಚ್ಛಿಸುವುದಿಲ್ಲ. ನಿಶ್ಚಯವಾಗಿಯೂ ಅಲ್ಲಾಹು ಸರ್ವಜ್ಞನು ಮತ್ತು ವಿವೇಕಪೂರ್ಣನಾಗಿದ್ದಾನೆ.

وَمَا تَشَآءُونَ إِلَّآ أَن يَشَآءَ ٱللَّهُۚ إِنَّ ٱللَّهَ كَانَ عَلِيمًا حَكِيمٗا ٣٠

31. ಅವನು ಇಚ್ಛಿಸುವವರನ್ನು ಅವನ ದಯೆಯಲ್ಲಿ ಸೇರಿಸುತ್ತಾನೆ. ಅಕ್ರಮಿಗಳಿಗೆ ಅವನು ಯಾತನಾಮಯ ಶಿಕ್ಷೆಯನ್ನು ಸಿದ್ಧಗೊಳಿಸಿದ್ದಾನೆ.

يُدۡخِلُ مَن يَشَآءُ فِي رَحۡمَتِهِۦۚ وَٱلظَّٰلِمِينَ أَعَدَّ لَهُمۡ عَذَابًا أَلِيمَۢا ٣١

# 77. ಅಲ್-ಮುರ್ಸಲಾತ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಮನದಣಿಸುತ್ತಾ ಸಾಗುವ ಮಾರುತಗಳ ಮೇಲಾಣೆ!

وَٱلۡمُرۡسَلَٰتِ عُرۡفٗا ١

2. ಬಲವಾಗಿ ಬೀಸುವ ಮಾರುತಗಳ ಮೇಲಾಣೆ!

فَٱلۡعَٰصِفَٰتِ عَصۡفٗا ٢

3. (ಮೋಡಗಳನ್ನು) ಎತ್ತಿ ಹಬ್ಬಿಸುವ ಮಾರುತಗಳ ಮೇಲಾಣೆ!

وَٱلنَّٰشِرَٰتِ نَشۡرٗا ٣

4. ಸತ್ಯಾಸತ್ಯಗಳನ್ನು ಬೇರ್ಪಡಿಸುವ ದೇವದೂತರ ಮೇಲಾಣೆ!

فَٱلۡفَٰرِقَٰتِ فَرۡقٗا ٤

5. ದೇವವಾಣಿಯನ್ನು ತರುವ ದೇವದೂತರ ಮೇಲಾಣೆ!

فَٱلۡمُلۡقِيَٰتِ ذِكۡرًا ٥

6. ಆರೋಪ ನಿವಾರಿಸಲು ಅಥವಾ ಎಚ್ಚರಿಕೆ ನೀಡಲು.

عُذۡرًا أَوۡ نُذۡرًا ٦

7. ನಿಶ್ಚಯವಾಗಿಯೂ ನಿಮಗೆ ವಾಗ್ದಾನ ಮಾಡಲಾಗುವ ವಿಷಯವು ಖಂಡಿತ ಸಂಭವಿಸುತ್ತದೆ.

إِنَّمَا تُوعَدُونَ لَوَٰقِعٞ ٧

8. ನಕ್ಷತ್ರಗಳನ್ನು ಪ್ರಕಾಶರಹಿತವಾಗಿ ಮಾಡಲಾಗುವಾಗ.

فَإِذَا ٱلنُّجُومُ طُمِسَتۡ ٨

9. ಆಕಾಶವನ್ನು ಹರಿದು ತೆರೆಯಲಾಗುವಾಗ.

وَإِذَا ٱلسَّمَآءُ فُرِجَتۡ ٩

10. ಪರ್ವತಗಳನ್ನು ನುಚ್ಚುನೂರು ಮಾಡಿ ಹಾರಿಸಲಾಗುವಾಗ.

وَإِذَا ٱلۡجِبَالُ نُسِفَتۡ ١٠

11. ಸಂದೇಶವಾಹಕರುಗಳನ್ನು ನಿಶ್ಚಿತ ಸಮಯಕ್ಕೆ ಕರೆತರಲಾಗುವಾಗ.[1]

وَإِذَا ٱلرُّسُلُ أُقِّتَتۡ ١١

12. ಅವರನ್ನು ಯಾವ ದಿನಕ್ಕಾಗಿ ಮಂದೂಡಲಾಗಿದೆ.

لِأَيِّ يَوۡمٍ أُجِّلَتۡ ١٢

[1] ಅಂದರೆ ಜನರ ಬಗ್ಗೆ ತೀರ್ಪು ನೀಡುವಾಗ ಆಯಾ ಸಮುದಾಯಕ್ಕೆ ಕಳುಹಿಸಲಾದ ಸಂದೇಶವಾಹಕರುಗಳನ್ನು ಕರೆಸಿ ಅವರಿಂದ ವಿವರಣೆ-ಗಳನ್ನು ಪಡೆದು ತೀರ್ಪು ನೀಡಲಾಗುವುದು.

| | |
|---|---|
| 13. ತೀರ್ಪಿನ ದಿನಕ್ಕಾಗಿ. | لِيَوۡمِ ٱلۡفَصۡلِ ﴿١٣﴾ |
| 14. ತೀರ್ಪಿನ ದಿನ ಏನೆಂದು ನಿಮಗೇನು ಗೊತ್ತು? | وَمَآ أَدۡرَىٰكَ مَا يَوۡمُ ٱلۡفَصۡلِ ﴿١٤﴾ |
| 15. ಅಂದು ನಿಷೇಧಿಸಿದವರಿಗೆ ವಿನಾಶವಿದೆ. | وَيۡلٞ يَوۡمَئِذٖ لِّلۡمُكَذِّبِينَ ﴿١٥﴾ |
| 16. ನಾವು ಹಿಂದಿನ ಕಾಲದವರನ್ನು ನಾಶ ಮಾಡಲಿಲ್ಲವೇ? | أَلَمۡ نُهۡلِكِ ٱلۡأَوَّلِينَ ﴿١٦﴾ |
| 17. ನಂತರ ನಾವು ಅವರ ಬಳಿಕ ಅವರ ನಂತರದವರನ್ನು ತಂದೆವು. | ثُمَّ نُتۡبِعُهُمُ ٱلۡأٓخِرِينَ ﴿١٧﴾ |
| 18. ನಾವು ಅಪರಾಧಿಗಳೊಂದಿಗೆ ಈ ರೀತಿ ವರ್ತಿಸುವೆವು. | كَذَٰلِكَ نَفۡعَلُ بِٱلۡمُجۡرِمِينَ ﴿١٨﴾ |
| 19. ಅಂದು ನಿಷೇಧಿಸಿದವರಿಗೆ ವಿನಾಶವಿದೆ. | وَيۡلٞ يَوۡمَئِذٖ لِّلۡمُكَذِّبِينَ ﴿١٩﴾ |
| 20. ನಾವು ನಿಮ್ಮನ್ನು ತುಚ್ಛ ದ್ರವದಿಂದ ಸೃಷ್ಟಿಸಲಿಲ್ಲವೇ? | أَلَمۡ نَخۡلُقكُّم مِّن مَّآءٖ مَّهِينٖ ﴿٢٠﴾ |
| 21. ನಂತರ ನಾವು ಅದನ್ನು ಸುರಕ್ಷಿತವಾದ ಭದ್ರ ಸ್ಥಳದಲ್ಲಿಟ್ಟೆವು. | فَجَعَلۡنَٰهُ فِي قَرَارٖ مَّكِينٍ ﴿٢١﴾ |
| 22. ಒಂದು ನಿಶ್ಚಿತ ಅವಧಿಯವರೆಗೆ. | إِلَىٰ قَدَرٖ مَّعۡلُومٖ ﴿٢٢﴾ |
| 23. ನಂತರ ನಾವು ನಿರ್ಣಯಿಸಿದೆವು. ನಾವು ಎಷ್ಟು ಉತ್ತಮ ನಿರ್ಣಯಗಾರರು! | فَقَدَرۡنَا فَنِعۡمَ ٱلۡقَٰدِرُونَ ﴿٢٣﴾ |
| 24. ಅಂದು ನಿಷೇಧಿಸಿದವರಿಗೆ ವಿನಾಶವಿದೆ. | وَيۡلٞ يَوۡمَئِذٖ لِّلۡمُكَذِّبِينَ ﴿٢٤﴾ |
| 25. ನಾವು ಭೂಮಿಯನ್ನು ಸಂಗ್ರಹಿಸುವ ಸ್ಥಳವಾಗಿ ಮಾಡಲಿಲ್ಲವೇ? | أَلَمۡ نَجۡعَلِ ٱلۡأَرۡضَ كِفَاتًا ﴿٢٥﴾ |
| 26. ಸತ್ತವರನ್ನು ಮತ್ತು ಬದುಕಿರುವವರನ್ನು. | أَحۡيَآءٗ وَأَمۡوَٰتٗا ﴿٢٦﴾ |
| 27. ನಾವು ಅದರಲ್ಲಿ ಎತ್ತರೆತ್ತರದ ದೃಢ ಪರ್ವತಗಳನ್ನು ಸ್ಥಾಪಿಸಿದೆವು ಮತ್ತು ನಿಮಗೆ ಕುಡಿಯಲು ಸಿಹಿಯಾದ ನೀರನ್ನು ನೀಡಿದೆವು. | وَجَعَلۡنَا فِيهَا رَوَٰسِيَ شَٰمِخَٰتٖ وَأَسۡقَيۡنَٰكُم مَّآءٗ فُرَاتٗا ﴿٢٧﴾ |
| 28. ಅಂದು ನಿಷೇಧಿಸಿದವರಿಗೆ ವಿನಾಶವಿದೆ. | وَيۡلٞ يَوۡمَئِذٖ لِّلۡمُكَذِّبِينَ ﴿٢٨﴾ |
| 29. (ಸತ್ಯನಿಷೇಧಿಗಳೊಡನೆ ಹೇಳಲಾಗುವುದು): “ನೀವು ನಿಷೇಧಿಸುತ್ತಿದ್ದ ಆ ನರಕಕ್ಕೆ ಹೋಗಿರಿ.” | ٱنطَلِقُوٓاْ إِلَىٰ مَا كُنتُم بِهِۦ تُكَذِّبُونَ ﴿٢٩﴾ |
| 30. ಮೂರು ಶಾಖೆಗಳಿರುವ ನೆರಳಿಗೆ ಹೋಗಿರಿ. | ٱنطَلِقُوٓاْ إِلَىٰ ظِلّٖ ذِي ثَلَٰثِ شُعَبٖ ﴿٣٠﴾ |
| 31. ಅದು ನೆರಳನ್ನು ನೀಡುವುದಿಲ್ಲ. ಅಗ್ನಿಜ್ವಾಲೆಯಿಂದ ರಕ್ಷಿಸುವುದೂ ಇಲ್ಲ. | لَّا ظَلِيلٖ وَلَا يُغۡنِي مِنَ ٱللَّهَبِ ﴿٣١﴾ |

| | |
|---|---|
| 32. ನಿಶ್ಚಯವಾಗಿಯೂ ಅದು (ನರಕ) ದೊಡ್ಡ ದೊಡ್ಡ ಅರಮನೆಗಳಂತಿರುವ ಕಿಡಿಗಳನ್ನು ಎಸೆಯುತ್ತದೆ. | إِنَّهَا تَرۡمِي بِشَرَرٖ كَٱلۡقَصۡرِ ٣٢ |
| 33. ಅವು ಹಳದಿ ಬಣ್ಣದ ಒಂಟೆಗಳ ಹಿಂಡುಗಳೋ ಎಂಬಂತೆ (ಕಾಣುತ್ತವೆ). | كَأَنَّهُۥ جِمَٰلَتٞ صُفۡرٞ ٣٣ |
| 34. ಅಂದು ನಿಷೇಧಿಸಿದವರಿಗೆ ವಿನಾಶವಿದೆ. | وَيۡلٞ يَوۡمَئِذٖ لِّلۡمُكَذِّبِينَ ٣٤ |
| 35. ಇದು ಅವರಿಗೆ ತುಟಿಬಿಚ್ಚಲು ಸಾಧ್ಯವಾಗದ ದಿನವಾಗಿದೆ. | هَٰذَا يَوۡمُ لَا يَنطِقُونَ ٣٥ |
| 36. ಅವರಿಗೆ ನೆಪಗಳನ್ನು ಹೇಳಲು ಅನುಮತಿ ನೀಡಲಾಗುವುದಿಲ್ಲ. | وَلَا يُؤۡذَنُ لَهُمۡ فَيَعۡتَذِرُونَ ٣٦ |
| 37. ಅಂದು ನಿಷೇಧಿಸಿದವರಿಗೆ ವಿನಾಶವಿದೆ. | وَيۡلٞ يَوۡمَئِذٖ لِّلۡمُكَذِّبِينَ ٣٧ |
| 38. (ಅವರೊಡನೆ ಹೇಳಲಾಗುವುದು): "ಇದೇ ತೀರ್ಪಿನ ದಿನ. ನಾವು ನಿಮ್ಮನ್ನು ಮತ್ತು ನಿಮ್ಮ ಪೂರ್ವಜರನ್ನು ಜಮಾವಣೆಗೊಳಿಸಿದ್ದೇವೆ. | هَٰذَا يَوۡمُ ٱلۡفَصۡلِۖ جَمَعۡنَٰكُمۡ وَٱلۡأَوَّلِينَ ٣٨ |
| 39. ನಿಮಲ್ಲಿ ಏನಾದರೂ ತಂತ್ರಗಳಿದ್ದರೆ ಅದನ್ನು ನನ್ನ ವಿರುದ್ಧ ಪ್ರಯೋಗಿಸಿರಿ." | فَإِن كَانَ لَكُمۡ كَيۡدٞ فَكِيدُونِ ٣٩ |
| 40. ಅಂದು ನಿಷೇಧಿಸಿದವರಿಗೆ ವಿನಾಶವಿದೆ. | وَيۡلٞ يَوۡمَئِذٖ لِّلۡمُكَذِّبِينَ ٤٠ |
| 41. ನಿಶ್ಚಯವಾಗಿಯೂ ದೇವಭಯವುಳ್ಳವರು ನೆರಳುಗಳಲ್ಲಿ ಮತ್ತು ಚಿಲುಮೆಗಳಲ್ಲಿರುವರು. | إِنَّ ٱلۡمُتَّقِينَ فِي ظِلَٰلٖ وَعُيُونٖ ٤١ |
| 42. ಅವರು ಹಾತೊರೆಯುವ ಹಣ್ಣು-ಹಂಪಲುಗಳಲ್ಲಿ. | وَفَوَٰكِهَ مِمَّا يَشۡتَهُونَ ٤٢ |
| 43. (ಅವರೊಡನೆ ಹೇಳಲಾಗುವುದು): "ನೀವು ಮಾಡಿದ ಸತ್ಕರ್ಮಗಳ ಪ್ರತಿಫಲವಾಗಿ ಸಂತೋಷದಿಂದ ತಿನ್ನಿರಿ ಮತ್ತು ಕುಡಿಯಿರಿ." | كُلُواْ وَٱشۡرَبُواْ هَنِيٓـَٔۢا بِمَا كُنتُمۡ تَعۡمَلُونَ ٤٣ |
| 44. ನಿಶ್ಚಯವಾಗಿಯೂ ನಾವು ಒಳಿತು ಮಾಡಿದವರಿಗೆ ಈ ರೀತಿ ಪ್ರತಿಫಲವನ್ನು ನೀಡುವೆವು. | إِنَّا كَذَٰلِكَ نَجۡزِي ٱلۡمُحۡسِنِينَ ٤٤ |
| 45. ಅಂದು ನಿಷೇಧಿಸಿದವರಿಗೆ ವಿನಾಶವಿದೆ. | وَيۡلٞ يَوۡمَئِذٖ لِّلۡمُكَذِّبِينَ ٤٥ |
| 46. (ಸತ್ಯನಿಷೇಧಿಗಳೇ) ನೀವು (ಇಹಲೋಕದಲ್ಲಿ) ಸ್ವಲ್ಪ ಸಮಯದವರೆಗೆ ತಿನ್ನಿರಿ ಮತ್ತು ಆನಂದಿಸಿರಿ. ನಿಶ್ಚಯವಾಗಿಯೂ ನೀವು ಅಪರಾಧಿಗಳಾಗಿದ್ದೀರಿ. | كُلُواْ وَتَمَتَّعُواْ قَلِيلًا إِنَّكُم مُّجۡرِمُونَ ٤٦ |

| | | |
|---|---|---|
| 47. | ಅಂದು ನಿಷೇಧಿಸಿದವರಿಗೆ ವಿನಾಶವಿದೆ. | وَيۡلٞ يَوۡمَئِذٖ لِّلۡمُكَذِّبِينَ ٤٧ |
| 48. | ಅವರೊಡನೆ ತಲೆಬಾಗಿರಿ ಎಂದು ಹೇಳಲಾಗುವಾಗ ಅವರು ತಲೆಬಾಗುವುದಿಲ್ಲ. | وَإِذَا قِيلَ لَهُمُ ٱرۡكَعُواْ لَا يَرۡكَعُونَ ٤٨ |
| 49. | ಅಂದು ನಿಷೇಧಿಸಿದವರಿಗೆ ವಿನಾಶವಿದೆ. | وَيۡلٞ يَوۡمَئِذٖ لِّلۡمُكَذِّبِينَ ٤٩ |
| 50. | ಅವರು ಇದರ (ಈ ಕುರ್‌ಆನಿನ) ನಂತರ ಯಾವ ಮಾತಿನಲ್ಲಿ ವಿಶ್ವಾಸವಿಡುವರು? | فَبِأَيِّ حَدِيثِۭ بَعۡدَهُۥ يُؤۡمِنُونَ ٥٠ |

# 78. ಅನ್ನಬಅ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ಅವರು ಪರಸ್ಪರ ಯಾವುದರ ಬಗ್ಗೆ ವಿಚಾರಿಸುತ್ತಿದ್ದಾರೆ? | عَمَّ يَتَسَآءَلُونَ ١ |
| 2. | ಆ ಮಹಾ ಸಮಾಚಾರದ (ಪುನರುತ್ಥಾನದ) ಬಗ್ಗೆ. | عَنِ ٱلنَّبَإِ ٱلۡعَظِيمِ ٢ |
| 3. | ಅದು ಅವರು ಭಿನ್ನಮತ ತಳೆದಿರುವ ಸಮಾಚಾರವಾಗಿದೆ. | ٱلَّذِي هُمۡ فِيهِ مُخۡتَلِفُونَ ٣ |
| 4. | ಖಂಡಿತವಾಗಿಯೂ ಅವರು ಸದ್ಯವೇ ತಿಳಿಯುವರು. | كَلَّا سَيَعۡلَمُونَ ٤ |
| 5. | ನಂತರ ಖಂಡಿತವಾಗಿಯೂ ಅವರಿಗೆ ಶೀಘ್ರವೇ ತಿಳಿದುಬರುವುದು. | ثُمَّ كَلَّا سَيَعۡلَمُونَ ٥ |
| 6. | ನಾವು ಭೂಮಿಯನ್ನು ಹಾಸನ್ನಾಗಿ ಮಾಡಲಿಲ್ಲವೇ? | أَلَمۡ نَجۡعَلِ ٱلۡأَرۡضَ مِهَٰدٗا ٦ |
| 7. | ಪರ್ವತಗಳನ್ನು ಗೂಟಗಳನ್ನಾಗಿ ಮಾಡಲಿಲ್ಲವೇ? | وَٱلۡجِبَالَ أَوۡتَادٗا ٧ |
| 8. | ನಿಮ್ಮನ್ನು ನಾವು ಜೋಡಿಗಳಾಗಿ ಸೃಷ್ಟಿಸಿದೆವು. | وَخَلَقۡنَٰكُمۡ أَزۡوَٰجٗا ٨ |
| 9. | ನಾವು ನಿಮ್ಮ ನಿದ್ದೆಯನ್ನು ವಿಶ್ರಾಂತಿಗೆ ಕಾರಣವಾಗಿ ಮಾಡಿದೆವು. | وَجَعَلۡنَا نَوۡمَكُمۡ سُبَاتٗا ٩ |
| 10. | ನಾವು ರಾತ್ರಿಯನ್ನು ಪರದೆಯಾಗಿ ಮಾಡಿದೆವು. | وَجَعَلۡنَا ٱلَّيۡلَ لِبَاسٗا ١٠ |
| 11. | ನಾವು ಹಗಲನ್ನು ಜೀವನೋಪಾಯದ ವೇಳೆಯಾಗಿ ಮಾಡಿದೆವು. | وَجَعَلۡنَا ٱلنَّهَارَ مَعَاشٗا ١١ |
| 12. | ನಾವು ನಿಮ್ಮ ಮೇಲ್ಭಾಗದಲ್ಲಿ ಏಳು ಬಲಿಷ್ಠ ಆಕಾಶಗಳನ್ನು ನಿರ್ಮಿಸಿದೆವು. | وَبَنَيۡنَا فَوۡقَكُمۡ سَبۡعٗا شِدَادٗا ١٢ |
| 13. | ನಾವು ಬೆಳಗುವ ಒಂದು ದೀಪವನ್ನು (ಸೂರ್ಯ) ಮಾಡಿದೆವು. | وَجَعَلۡنَا سِرَاجٗا وَهَّاجٗا ١٣ |
| 14. | ನಾವು ಮೋಡಗಳಿಂದ ಧಾರಾಕಾರವಾಗಿ ಮಳೆಯನ್ನು ಸುರಿಸಿದೆವು. | وَأَنزَلۡنَا مِنَ ٱلۡمُعۡصِرَٰتِ مَآءٗ ثَجَّاجٗا ١٤ |

15. ಅದರಿಂದ ಧಾನ್ಯ ಹಾಗೂ ತರಕಾರಿಯನ್ನು ಬೆಳೆಸುವುದಕ್ಕಾಗಿ. لِّنُخۡرِجَ بِهِۦ حَبّٗا وَنَبَاتٗا ﴿١٥﴾

16. ಮತ್ತು ದಟ್ಟವಾದ ತೋಟಗಳನ್ನು. وَجَنَّٰتٍ أَلۡفَافًا ﴿١٦﴾

17. ನಿಶ್ಚಯವಾಗಿಯೂ ತೀರ್ಪು ನೀಡುವ ದಿನದ ಸಮಯವನ್ನು ನಿಶ್ಚಯಿಸಲಾಗಿದೆ. إِنَّ يَوۡمَ ٱلۡفَصۡلِ كَانَ مِيقَٰتٗا ﴿١٧﴾

18. ಕಹಳೆಯಲ್ಲಿ ಊದಲಾಗುವ ದಿನ. ಆಗ ನೀವು ಗುಂಪು ಗುಂಪಾಗಿ ಬರುವಿರಿ. يَوۡمَ يُنفَخُ فِي ٱلصُّورِ فَتَأۡتُونَ أَفۡوَاجٗا ﴿١٨﴾

19. ಆಕಾಶವನ್ನು ತೆರೆಯಲಾಗುವುದು. ಆಗ ಅದು ಅಸಂಖ್ಯ ಬಾಗಿಲುಗಳಾಗಿ ಮಾರ್ಪಡುವುದು. وَفُتِحَتِ ٱلسَّمَآءُ فَكَانَتۡ أَبۡوَٰبٗا ﴿١٩﴾

20. ಪರ್ವತಗಳನ್ನು ಚಲಿಸುವಂತೆ ಮಾಡಲಾಗುವುದು. ಆಗ ಅವು ಮರೀಚಿಕೆಯಂತಾಗುವುವು. وَسُيِّرَتِ ٱلۡجِبَالُ فَكَانَتۡ سَرَابًا ﴿٢٠﴾

21. ನಿಶ್ಚಯವಾಗಿಯೂ ನರಕವು ನಿಗಾವಣೆಯ ಸ್ಥಳದಲ್ಲಿದೆ. إِنَّ جَهَنَّمَ كَانَتۡ مِرۡصَادٗا ﴿٢١﴾

22. ಅದು ಎಲ್ಲೆ ಮೀರಿ ವರ್ತಿಸಿದವರ ವಾಸಸ್ಥಳವಾಗಿದೆ. لِّلطَّٰغِينَ مَـَٔابٗا ﴿٢٢﴾

23. ಅವರು ಯುಗ ಯುಗಾಂತರ ಅದರಲ್ಲಿ ವಾಸಿಸುವರು. لَّٰبِثِينَ فِيهَآ أَحۡقَابٗا ﴿٢٣﴾

24. ಅವರು ಅಲ್ಲಿ ತಂಪು ಅಥವಾ ಪಾನೀಯದ ರುಚಿಯನ್ನು ನೋಡುವುದೇ ಇಲ್ಲ. لَّا يَذُوقُونَ فِيهَا بَرۡدٗا وَلَا شَرَابًا ﴿٢٤﴾

25. ಕುದಿಯುವ ನೀರು ಮತ್ತು (ದುರ್ಗಂಧಪೂರಿತ) ಕೀವಿನ (ರುಚಿಯ) ಹೊರತು. إِلَّا حَمِيمٗا وَغَسَّاقٗا ﴿٢٥﴾

26. ಅವರಿಗೆ ಪೂರ್ಣ ಪ್ರತಿಫಲ ನೀಡಲಾಗುವುದು. جَزَآءٗ وِفَاقًا ﴿٢٦﴾

27. ನಿಶ್ಚಯವಾಗಿಯೂ ಅವರು ವಿಚಾರಣೆಯನ್ನು ನಿರೀಕ್ಷಿಸುತ್ತಿರಲಿಲ್ಲ. إِنَّهُمۡ كَانُواْ لَا يَرۡجُونَ حِسَابٗا ﴿٢٧﴾

28. ಅವರು ಸೊಕ್ಕಿನಿಂದ ನಮ್ಮ ವಚನಗಳನ್ನು ನಿಷೇಧಿಸಿದ್ದರು. وَكَذَّبُواْ بِـَٔايَٰتِنَا كِذَّابٗا ﴿٢٨﴾

29. ನಾವು ಎಲ್ಲ ವಿಷಯಗಳನ್ನೂ ಲಿಖಿತಗೊಳಿಸಿ ಎಣಿಸಿಟ್ಟಿದ್ದೇವೆ. وَكُلَّ شَيۡءٍ أَحۡصَيۡنَٰهُ كِتَٰبٗا ﴿٢٩﴾

30. ಆದ್ದರಿಂದ ನೀವು (ನಿಮ್ಮ ದುಷ್ಕರ್ಮಗಳ) ರುಚಿಯನ್ನು ನೋಡಿರಿ. ನಾವು ನಿಮಗೆ ಶಿಕ್ಷೆಯಲ್ಲದೆ ಬೇರೇನನ್ನೂ ಅಧಿಕಗೊಳಿಸುವುದಿಲ್ಲ. فَذُوقُواْ فَلَن نَّزِيدَكُمۡ إِلَّا عَذَابًا ﴿٣٠﴾

31. ನಿಶ್ಚಯವಾಗಿಯೂ ದೇವಭಯವುಳ್ಳವರಿಗೆ ವಿಜಯವಿದೆ. إِنَّ لِلۡمُتَّقِينَ مَفَازًا ﴿٣١﴾

32. ತೋಟಗಳು ಮತ್ತು ದ್ರಾಕ್ಷಿಗಳಿವೆ. حَدَآئِقَ وَأَعۡنَٰبٗا ﴿٣٢﴾

33. ಸಮಪ್ರಾಯದ ಯುವ ತರುಣಿಯರಿದ್ದಾರೆ. وَكَوَاعِبَ أَتۡرَابٗا ﴿٣٣﴾

34. ತುಂಬಿ ತುಳುಕುವ ಲೋಟಗಳಿವೆ.

وَكَأۡسٗا دِهَاقٗا ﴿٣٤﴾

35. ಅವರು ಅಲ್ಲಿ ಅನಗತ್ಯ ಮಾತುಗಳನ್ನು ಅಥವಾ ಸುಳ್ಳು ವಾರ್ತೆಗಳನ್ನು ಕೇಳುವುದಿಲ್ಲ.

لَّا يَسۡمَعُونَ فِيهَا لَغۡوٗا وَلَا كِذَّٰبٗا ﴿٣٥﴾

36. ಇವೆಲ್ಲವೂ ಅವರಿಗೆ ನಿಮ್ಮ ಪರಿಪಾಲಕನಿಂದ (ಅಲ್ಲಾಹನಿಂದ) ದೊರೆಯುವ ಪರ್ಯಾಪ್ತ ಪ್ರತಿಫಲವಾಗಿದೆ.

جَزَآءٗ مِّن رَّبِّكَ عَطَآءً حِسَابٗا ﴿٣٦﴾

37. ಅವನು ಯಾರೆಂದರೆ ಭೂಮ್ಯಾಕಾಶಗಳ ಮತ್ತು ಅವುಗಳ ನಡುವೆಯಿರುವ ಎಲ್ಲಾ ವಸ್ತುಗಳ ಪರಿಪಾಲಕ. ಅವನು ಪರಮ ದಯಾಳುವಾಗಿದ್ದಾನೆ. ಅವನೊಡನೆ ಮಾತನಾಡುವ ಅಧಿಕಾರ ಯಾರಿಗೂ ಇಲ್ಲ.

رَّبِّ ٱلسَّمَٰوَٰتِ وَٱلۡأَرۡضِ وَمَا بَيۡنَهُمَا ٱلرَّحۡمَٰنِۖ لَا يَمۡلِكُونَ مِنۡهُ خِطَابٗا ﴿٣٧﴾

38. ರೂಹ್ (ಜಿಬ್ರೀಲ್) ಮತ್ತು ದೇವದೂತರುಗಳು ಸಾಲು ಸಾಲಾಗಿ ನಿಲ್ಲುವ ದಿನ. (ಅಂದು) ಪರಮ ದಯಾಳುವಾದ ಅಲ್ಲಾಹು ಯಾರಿಗೆ ಅನುಮತಿ ನೀಡುತ್ತಾನೋ ಮತ್ತು ಯಾರು ಸರಿಯಾದ ಮಾತನ್ನೇ ಆಡುತ್ತಾರೋ ಅವರ ಹೊರತು ಬೇರೆ ಯಾರಿಗೂ ತುಟಿ ಬಿಚ್ಚಲಾಗುವುದಿಲ್ಲ.

يَوۡمَ يَقُومُ ٱلرُّوحُ وَٱلۡمَلَٰٓئِكَةُ صَفّٗاۖ لَّا يَتَكَلَّمُونَ إِلَّا مَنۡ أَذِنَ لَهُ ٱلرَّحۡمَٰنُ وَقَالَ صَوَابٗا ﴿٣٨﴾

39. ಆ ದಿನವು ಸತ್ಯವಾಗಿದೆ. ಆದ್ದರಿಂದ ಇಚ್ಛೆಯುಳ್ಳವನು (ಸತ್ಕ-ರ್ಮಗಳನ್ನು ಮಾಡಿ) ತನ್ನ ಪರಿಪಾಲಕನ (ಅಲ್ಲಾಹನ) ಬಳಿ ವಾಸಸ್ಥಳವನ್ನು ಸ್ವೀಕರಿಸಿಕೊಳ್ಳಲಿ.

ذَٰلِكَ ٱلۡيَوۡمُ ٱلۡحَقُّۖ فَمَن شَآءَ ٱتَّخَذَ إِلَىٰ رَبِّهِۦ مَـَٔابًا ﴿٣٩﴾

40. ನಾವು ನಿಮಗೆ ಶೀಘ್ರದಲ್ಲೇ ಬರುವ ಒಂದು ಶಿಕ್ಷೆಯ ಬಗ್ಗೆ ನಿಶ್ಚಯವಾಗಿಯೂ ಮುನ್ನೆಚ್ಚರಿಕೆ ನೀಡಿದ್ದೇವೆ. ಅಂದು ಮನುಷ್ಯನು ತನ್ನ ಕೈಗಳು ಮುಂದಕ್ಕೆ ಕಳುಹಿಸಿದ ಕರ್ಮಗಳನ್ನು ನೋಡುವನು ಮತ್ತು ಸತ್ಯನಿಷೇಧಿಯು ಹೇಳುವನು: “ಅಯ್ಯೋ! ನಾನು ಮಣ್ಣಾಗಿ ಬಿಟ್ಟಿದ್ದರೆ ಎಷ್ಟು ಚೆನ್ನಾಗಿತ್ತು!”

إِنَّآ أَنذَرۡنَٰكُمۡ عَذَابٗا قَرِيبٗا يَوۡمَ يَنظُرُ ٱلۡمَرۡءُ مَا قَدَّمَتۡ يَدَاهُ وَيَقُولُ ٱلۡكَافِرُ يَٰلَيۡتَنِي كُنتُ تُرَٰبَۢا ﴿٤٠﴾

# 79. ಅನ್ನಾಝಿಆತ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ

1. (ದೇಹದೊಳಗೆ) ಧುಮುಕಿ (ಸತ್ಯನಿಷೇಧಿಗಳ ಆತ್ಮಗಳನ್ನು) ಕಠೋರವಾಗಿ ಎಳೆಯುವ ದೇವದೂತರ ಮೇಲಾಣೆ! | وَٱلنَّٰزِعَٰتِ غَرۡقٗا ١

2. (ಸತ್ಯವಿಶ್ವಾಸಿಗಳ ಆತ್ಮಗಳನ್ನು) ಸೌಮ್ಯವಾಗಿ ಎಳೆಯುವ ದೇವದೂತರ ಮೇಲಾಣೆ! | وَٱلنَّٰشِطَٰتِ نَشۡطٗا ٢

3. ಈಜುತ್ತಾ ಚಲಿಸುವ ದೇವದೂತರ ಮೇಲಾಣೆ! | وَٱلسَّٰبِحَٰتِ سَبۡحٗا ٣

4. ನಂತರ ದೌಡಾಯಿಸುತ್ತಾ ಮುಂದಕ್ಕೆ ಸಾಗುವ ದೇವದೂತರ ಮೇಲಾಣೆ! | فَٱلسَّٰبِقَٰتِ سَبۡقٗا ٤

5. ಕಾರ್ಯಗಳನ್ನು ನಿಯಂತ್ರಿಸುವ ದೇವದೂತರ ಮೇಲಾಣೆ! | فَٱلۡمُدَبِّرَٰتِ أَمۡرٗا ٥

6. ನಡುಗಿಸುವಂತದ್ದು (ಪ್ರಥಮ ಊದುವಿಕೆ) ನಡುಗಿಸುವ ದಿನ! | يَوۡمَ تَرۡجُفُ ٱلرَّاجِفَةُ ٦

7. ಹಿಂಬಾಲಿಸಿ ಬರುವಂತದ್ದು (ಎರಡನೇ ಊದುವಿಕೆ) ಅದರ ಹಿಂದೆಯೇ ಬರುವುದು. | تَتۡبَعُهَا ٱلرَّادِفَةُ ٧

8. ಅಂದು ಬಹಳಷ್ಟು ಹೃದಯಗಳು ಢವಗುಡುತ್ತಿರುವುವು. | قُلُوبٞ يَوۡمَئِذٖ وَاجِفَةٌ ٨

9. ಅವರ ಕಣ್ಣುಗಳು ಕೆಳಭಾಗಕ್ಕೆ ತಗ್ಗಿರುವುವು. | أَبۡصَٰرُهَا خَٰشِعَةٞ ٩

10. ಅವರು ಕೇಳುವರು: “ನಮ್ಮನ್ನು ನಮ್ಮ ಪೂರ್ವಸ್ಥಿತಿಗೆ ಮರಳಿಸಲಾಗುವುದೇ? | يَقُولُونَ أَءِنَّا لَمَرۡدُودُونَ فِي ٱلۡحَافِرَةِ ١٠

11. ನಾವು ಕೊಳೆತ ಮೂಳೆಗಳಾಗಿ ಬಿಟ್ಟ ಬಳಿಕ!” | أَءِذَا كُنَّا عِظَٰمٗا نَّخِرَةٗ ١١

12. ಅವರು ಹೇಳುವರು: “ಹಾಗಿದ್ದರೆ ಅದು ನಷ್ಟಭರಿತ ಮರಳುವಿಕೆಯಾಗಿದೆ.” | قَالُواْ تِلۡكَ إِذٗا كَرَّةٌ خَاسِرَةٞ ١٢

13. ಅದು ಕೇವಲ ಒಂದು (ಭಯಾನಕ) ಗದರಿಕೆಯಾಗಿದೆ. | فَإِنَّمَا هِيَ زَجۡرَةٞ وَٰحِدَةٞ ١٣

14. ಆಗ ಅಗೋ ಅವರು ಒಂದು ಮೈದಾನದಲ್ಲಿ ಒಟ್ಟುಗೂಡುವರು! | فَإِذَا هُم بِٱلسَّاهِرَةِ ١٤

15. ಮೂಸಾರ ಸಮಾಚಾರವು ನಿಮಗೆ ತಲುಪಿದೆಯೇ? | هَلۡ أَتَىٰكَ حَدِيثُ مُوسَىٰٓ ١٥

16. ಪವಿತ್ರ ತುವಾ ಕಣಿವೆಯಲ್ಲಿ ಅವರ ಪರಿಪಾಲಕನು (ಅಲ್ಲಾಹು) ಅವರನ್ನು ಕರೆದು ಹೇಳಿದ ಸಂದರ್ಭ: | إِذۡ نَادَىٰهُ رَبُّهُۥ بِٱلۡوَادِ ٱلۡمُقَدَّسِ طُوًى ١٦

17. “ಫರೋಹನ ಬಳಿಗೆ ಹೋಗಿರಿ. ನಿಶ್ಚಯವಾಗಿಯೂ ಅವನು ಎಲ್ಲೆ | ٱذۡهَبۡ إِلَىٰ فِرۡعَوۡنَ إِنَّهُۥ طَغَىٰ ١٧

ಮೀರಿ ವರ್ತಿಸಿದ್ದಾನೆ.

18. ಅವನೊಡನೆ ಕೇಳಿರಿ: ನೀನು ಸ್ವಯಂ ಸಂಸ್ಕರಿಸಲು ಬಯಸುವೆಯಾ? | فَقُلۡ هَل لَّكَ إِلَىٰٓ أَن تَزَكَّىٰ ﴿١٨﴾

19. ನಾನು ನಿನಗೆ ನಿನ್ನ ಪರಿಪಾಲಕನ (ಅಲ್ಲಾಹನ) ಮಾರ್ಗವನ್ನು ತೋರಿಸಿಕೊಡುವೆನು. ಅದರಿಂದ ನೀನು ದೇವಭಯವುಳ್ಳವನಾಗಬಹುದು.” | وَأَهۡدِيَكَ إِلَىٰ رَبِّكَ فَتَخۡشَىٰ ﴿١٩﴾

20. ಮೂಸಾ ಅವನಿಗೆ ಮಹಾ ದೃಷ್ಟಾಂತವನ್ನು ತೋರಿಸಿದರು. | فَأَرَىٰهُ ٱلۡأٓيَةَ ٱلۡكُبۡرَىٰ ﴿٢٠﴾

21. ಆದರೆ ಅವನು ನಿಷೇಧಿಸಿದನು ಮತ್ತು ಅವಿಧೇಯತೆ ತೋರಿದನು. | فَكَذَّبَ وَعَصَىٰ ﴿٢١﴾

22. ನಂತರ ಅವನು (ತಂತ್ರಗಾರಿಕೆ ಮಾಡಲು) ಪರಿಶ್ರಮಿಸುತ್ತಾ ಹಿಂದಿರುಗಿ ಹೋದನು. | ثُمَّ أَدۡبَرَ يَسۡعَىٰ ﴿٢٢﴾

23. ನಂತರ ಎಲ್ಲರನ್ನೂ ಜಮಾವಣೆಗೊಳಿಸಿ ಘೋಷಿಸಿದನು. | فَحَشَرَ فَنَادَىٰ ﴿٢٣﴾

24. ಅವನು ಹೇಳಿದನು: “ನಾನು ನಿಮ್ಮ ಪರಮೋಚ್ಛ ದೇವನಾಗಿದ್ದೇನೆ.” | فَقَالَ أَنَا۠ رَبُّكُمُ ٱلۡأَعۡلَىٰ ﴿٢٤﴾

25. ಆಗ ಅಲ್ಲಾಹು ಅವನನ್ನು ಪರಲೋಕ ಮತ್ತು ಇಹಲೋಕದ ಶಿಕ್ಷೆಗಾಗಿ ಹಿಡಿದನು. | فَأَخَذَهُ ٱللَّهُ نَكَالَ ٱلۡأٓخِرَةِ وَٱلۡأُولَىٰٓ ﴿٢٥﴾

26. ನಿಶ್ಚಯವಾಗಿಯೂ ಭಯಪಡುವವರಿಗೆ ಅದರಲ್ಲಿ ನೀತಿಪಾಠವಿದೆ. | إِنَّ فِي ذَٰلِكَ لَعِبۡرَةٗ لِّمَن يَخۡشَىٰٓ ﴿٢٦﴾

27. ನಿಮ್ಮನ್ನು ಸೃಷ್ಟಿಸುವುದು ಕಷ್ಟವೋ ಅಥವಾ ಆಕಾಶವನ್ನೋ? ಅವನು ಆಕಾಶವನ್ನು ನಿರ್ಮಿಸಿದನು. | ءَأَنتُمۡ أَشَدُّ خَلۡقًا أَمِ ٱلسَّمَآءُۚ بَنَىٰهَا ﴿٢٧﴾

28. ಅದರ ಛಾವಣಿಯನ್ನು ಎತ್ತರಿಸಿದನು ಮತ್ತು ಅದನ್ನು ಸರಿಪಡಿಸಿದನು. | رَفَعَ سَمۡكَهَا فَسَوَّىٰهَا ﴿٢٨﴾

29. ಅದರ ರಾತ್ರಿಯನ್ನು ಕತ್ತಲೆಯಾಗಿ ಮಾಡಿದನು ಮತ್ತು ಅದರ ಹಗಲನ್ನು ಪ್ರತ್ಯಕ್ಷಗೊಳಿಸಿದನು. | وَأَغۡطَشَ لَيۡلَهَا وَأَخۡرَجَ ضُحَىٰهَا ﴿٢٩﴾

30. ಅದರ ನಂತರ ಅವನು ಭೂಮಿಯನ್ನು ವಿಸ್ತರಿಸಿದನು. | وَٱلۡأَرۡضَ بَعۡدَ ذَٰلِكَ دَحَىٰهَآ ﴿٣٠﴾

31. ಅದರಿಂದ ನೀರನ್ನು ಮತ್ತು ಹುಲ್ಲುಗಾವಲುಗಳನ್ನು ಹೊರತೆಗೆದನು. | أَخۡرَجَ مِنۡهَا مَآءَهَا وَمَرۡعَىٰهَا ﴿٣١﴾

32. ಪರ್ವತಗಳನ್ನು ದೃಢವಾಗಿ ನಿಲ್ಲಿಸಿದನು. | وَٱلۡجِبَالَ أَرۡسَىٰهَا ﴿٣٢﴾

33. ಇವೆಲ್ಲವೂ ನಿಮ್ಮ ಮತ್ತು ನಿಮ್ಮ ಜಾನುವಾರುಗಳ ಉಪಯೋಗಕ್ಕಾಗಿ. | مَتَٰعٗا لَّكُمۡ وَلِأَنۡعَٰمِكُمۡ ﴿٣٣﴾

| | |
|---|---|
| 34. ಆ ಮಹಾ ವಿಪತ್ತು (ಪುನರುತ್ಥಾನ ದಿನ) ಬರುವ ಸಂದರ್ಭ. | فَإِذَا جَآءَتِ ٱلطَّآمَّةُ ٱلْكُبْرَىٰ ﴿٣٤﴾ |
| 35. ಅಂದು ಮನುಷ್ಯನು ತಾನು ಮಾಡಿಟ್ಟ ಕರ್ಮಗಳನ್ನು ಸ್ಮರಿಸುವನು. | يَوْمَ يَتَذَكَّرُ ٱلْإِنسَٰنُ مَا سَعَىٰ ﴿٣٥﴾ |
| 36. ನೋಡುಗರೆಲ್ಲರ ಮುಂದೆ ನರಕವನ್ನು ಪ್ರದರ್ಶಿಸಲಾಗುವುದು. | وَبُرِّزَتِ ٱلْجَحِيمُ لِمَن يَرَىٰ ﴿٣٦﴾ |
| 37. ಆದ್ದರಿಂದ ಯಾರು ಎಲ್ಲೆ ಮೀರಿದವನೋ, | فَأَمَّا مَن طَغَىٰ ﴿٣٧﴾ |
| 38. ಮತ್ತು ಇಹಲೋಕಕ್ಕೆ ಪ್ರಾಶಸ್ತ್ಯ ನೀಡಿದವನೋ, | وَءَاثَرَ ٱلْحَيَوٰةَ ٱلدُّنْيَا ﴿٣٨﴾ |
| 39. ನಿಶ್ಚಯವಾಗಿಯೂ ನರಕವೇ ಅವನ ವಾಸಸ್ಥಳ. | فَإِنَّ ٱلْجَحِيمَ هِىَ ٱلْمَأْوَىٰ ﴿٣٩﴾ |
| 40. ಯಾರು ತನ್ನ ಪರಿಪಾಲಕನ (ಅಲ್ಲಾಹನ) ಮುಂದೆ ನಿಲ್ಲುವುದನ್ನು ಭಯಪಟ್ಟನೋ ಮತ್ತು ತನ್ನ ದೇಹವನ್ನು ಸ್ವೇಚ್ಛೆಗಳಿಂದ ದೂರವಿಟ್ಟವನೋ, | وَأَمَّا مَنْ خَافَ مَقَامَ رَبِّهِۦ وَنَهَى ٱلنَّفْسَ عَنِ ٱلْهَوَىٰ ﴿٤٠﴾ |
| 41. ನಿಶ್ಚಯವಾಗಿಯೂ ಸ್ವರ್ಗವೇ ಅವನ ವಾಸಸ್ಥಳ. | فَإِنَّ ٱلْجَنَّةَ هِىَ ٱلْمَأْوَىٰ ﴿٤١﴾ |
| 42. ಅಂತ್ಯಸಮಯವು—ಅದು ಯಾವಾಗ ಸಂಭವಿಸುತ್ತದೆಯೆಂದು ಅವರು ನಿಮ್ಮಲ್ಲಿ ಕೇಳುತ್ತಾರೆ. | يَسْـَٔلُونَكَ عَنِ ٱلسَّاعَةِ أَيَّانَ مُرْسَىٰهَا ﴿٤٢﴾ |
| 43. ನಿಮಗೆ ಅದರ ಬಗ್ಗೆ ಏನು ಜ್ಞಾನವಿದೆ? | فِيمَ أَنتَ مِن ذِكْرَىٰهَآ ﴿٤٣﴾ |
| 44. ಅದರ ಆತ್ಯಂತಿಕ ಜ್ಞಾನವಿರುವುದು ನಿಮ್ಮ ಪರಿಪಾಲಕನಿಗೆ (ಅಲ್ಲಾಹನಿಗೆ) ಮಾತ್ರ. | إِلَىٰ رَبِّكَ مُنتَهَىٰهَآ ﴿٤٤﴾ |
| 45. ನೀವಂತೂ ಅದನ್ನು ಭಯಪಡುವವರಿಗೆ ಮುನ್ನೆಚ್ಚರಿಕೆ ನೀಡುವವರಾಗಿದ್ದೀರಿ. | إِنَّمَآ أَنتَ مُنذِرُ مَن يَخْشَىٰهَا ﴿٤٥﴾ |
| 46. ಅವರು ಅದನ್ನು ನೋಡುವ ದಿನದಂದು, ದಿನದ ಕೊನೆಯ ಭಾಗ ಅಥವಾ ದಿನದ ಮೊದಲ ಭಾಗ ಮಾತ್ರ ಅವರು (ಭೂಮಿಯಲ್ಲಿ) ವಾಸವಾಗಿದ್ದರು ಎಂದು ಅವರಿಗೆ ಭಾಸವಾಗುವುದು. | كَأَنَّهُمْ يَوْمَ يَرَوْنَهَا لَمْ يَلْبَثُوٓا۟ إِلَّا عَشِيَّةً أَوْ ضُحَىٰهَا ﴿٤٦﴾ |

# 80. ಅಬಸ್

| | |
|---|---|
| ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. ಅವರು (ಪ್ರವಾದಿ) ಮುಖ ಸಿಂಡರಿಸಿದರು ಮತ್ತು ವಿಮುಖರಾದರು. | عَبَسَ وَتَوَلَّىٰٓ ١ |
| 2. ಒಬ್ಬ ಕುರುಡ ಅವರ ಬಳಿಗೆ ಬಂದರು ಎಂಬ ಕಾರಣದಿಂದ.[1] | أَن جَآءَهُ ٱلۡأَعۡمَىٰ ٢ |
| 3. (ಪ್ರವಾದಿಯವರೇ!) ನಿಮಗೇನು ಗೊತ್ತು? ಆ ಕುರುಡರು ಪರಿಶು-ದ್ಧತೆಯನ್ನು ಪಡೆಯಬಹುದು. | وَمَا يُدۡرِيكَ لَعَلَّهُۥ يَزَّكَّىٰٓ ٣ |
| 4. ಅಥವಾ ಉಪದೇಶಕ್ಕೆ ಕಿವಿಗೊಟ್ಟು, ಆ ಉಪದೇಶವು ಅವರಿಗೆ ಪ್ರಯೋಜನವಾಗಬಹುದು. | أَوۡ يَذَّكَّرُ فَتَنفَعَهُ ٱلذِّكۡرَىٰٓ ٤ |
| 5. ಆದರೆ ಯಾರು ತನ್ನನ್ನು ತಾನೇ ಸ್ವಯಂ-ಪರ್ಯಾಪ್ತನೆಂದು ಪರಿಗಣಿಸುತ್ತಾನೋ, | أَمَّا مَنِ ٱسۡتَغۡنَىٰ ٥ |
| 6. ಅವನ ಕಡೆಗೆ ನೀವು ಪೂರ್ಣ ಗಮನ ಹರಿಸಿದಿರಿ.[2] | فَأَنتَ لَهُۥ تَصَدَّىٰ ٦ |
| 7. ಅವನು ಪರಿಶುದ್ಧತೆಯನ್ನು ಪಡೆಯದಿದ್ದರೆ ನಿಮಗೇನೂ ದೋಷವಿಲ್ಲ. | وَمَا عَلَيۡكَ أَلَّا يَزَّكَّىٰ ٧ |
| 8. ಆದರೆ ಯಾರು ನಿಮ್ಮ ಬಳಿಗೆ ಓಡುತ್ತಾ ಬಂದರೋ, | وَأَمَّا مَن جَآءَكَ يَسۡعَىٰ ٨ |
| 9. ಅಲ್ಲಾಹನನ್ನು ಭಯಪಡುವ ಸ್ಥಿತಿಯಲ್ಲಿ, | وَهُوَ يَخۡشَىٰ ٩ |
| 10. ಅವರ ಬಗ್ಗೆ ನೀವು ಅಸಡ್ಡೆ ತೋರಿದಿರಿ. | فَأَنتَ عَنۡهُ تَلَهَّىٰ ١٠ |
| 11. ಅಲ್ಲ. ನಿಶ್ಚಯವಾಗಿಯೂ ಇದು (ಕುರ್‌ಆನ್) ಒಂದು ಉಪದೇಶವಾಗಿದೆ. | كَلَّآ إِنَّهَا تَذۡكِرَةٞ ١١ |
| 12. ಇಚ್ಛೆಯುಳ್ಳವರು ಅದರಿಂದ ಉಪದೇಶ ಪಡೆಯಲಿ. | فَمَن شَآءَ ذَكَرَهُۥ ١٢ |
| 13. ಅದು ಪ್ರತಿಷ್ಠಿತ ಗ್ರಂಥದಲ್ಲಿದೆ. | فِي صُحُفٖ مُّكَرَّمَةٖ ١٣ |
| 14. ಉನ್ನತವಾದ ಮತ್ತು ಪರಿಶುದ್ಧವಾದ (ಗ್ರಂಥದಲ್ಲಿ). | مَّرۡفُوعَةٖ مُّطَهَّرَةِۭ ١٤ |

---

[1] ಒಮ್ಮೆ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಕುರೈಷ್ ಮುಖಂಡರಿಗೆ ಧರ್ಮದ ವಿಷಯಗಳನ್ನು ಹೇಳಿಕೊಟ್ಟು ಇಸ್ಲಾಂಗೆ ಆಮಂತ್ರಿಸುತ್ತಿದ್ದಾಗ, ಅವರ ಅನುಯಾಯಿಗಳಲ್ಲಿ ಒಬ್ಬರಾದ ಇಬ್ನ್ ಉಮ್ಮ್ ಮಕ್ತೂಮ್ (ಅಲ್ಲಾಹು ಅವರ ಬಗ್ಗೆ ಸಂಪ್ರೀತನಾಗಲಿ) ಅಲ್ಲಿಗೆ ಬಂದು ಏನೋ ಕೇಳಿದರು. ಅವರು ಕುರುಡರಾಗಿದ್ದರು. ಆದರೆ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಅವರ ಕಡೆಗೆ ಗಮನಹರಿಸದೆ ಕುರೈಷ್ ಮುಖಂಡರಿಗೆ ಆಮಂತ್ರಣ ನೀಡುವುದನ್ನು ಮುಂದುವರಿಸಿದರು. ಇದನ್ನು ಇಲ್ಲಿ ವಿಮರ್ಶಿಸಲಾಗಿದೆ.

[2] ಅಂದರೆ ನೀವು ಕುರೈಷ್ ಮುಖಂಡನ ಕಡೆಗೆ ಪೂರ್ಣ ಗಮನ ಹರಿಸಿದಿರಿ.

| | | |
|---|---|---|
| 15. | ಅದು ದೇವದೂತರುಗಳ ಕೈಗಳಲ್ಲಿವೆ. | بِأَيْدِى سَفَرَةٍ ﴿١٥﴾ |
| 16. | ಗಣ್ಯರು ಮತ್ತು ನೀತಿವಂತರಾದ (ದೇವದೂತರುಗಳು). | كِرَامٍ بَرَرَةٍ ﴿١٦﴾ |
| 17. | ಮನುಷ್ಯನ ಮೇಲೆ ಅಲ್ಲಾಹನ ಶಾಪವಿರಲಿ! ಅವನು ಎಷ್ಟೊಂದು ಕೃತಜ್ಞತೆಯಿಲ್ಲದವನಾಗಿ ಬಿಟ್ಟಿದ್ದಾನೆ! | قُتِلَ ٱلْإِنسَٰنُ مَآ أَكْفَرَهُۥ ﴿١٧﴾ |
| 18. | ಅಲ್ಲಾಹು ಅವನನ್ನು ಯಾವ ವಸ್ತುವಿನಿಂದ ಸೃಷ್ಟಿಸಿದನು? | مِنْ أَىِّ شَىْءٍ خَلَقَهُۥ ﴿١٨﴾ |
| 19. | ಅವನನ್ನು ವೀರ್ಯದಿಂದ ಸೃಷ್ಟಿಸಿದನು. ನಂತರ ಅವನನ್ನು ನಿರ್ಣಯಿಸಿದನು. | مِن نُّطْفَةٍ خَلَقَهُۥ فَقَدَّرَهُۥ ﴿١٩﴾ |
| 20. | ನಂತರ ಅವನಿಗೆ ಮಾರ್ಗವನ್ನು ಸುಗಮಗೊಳಿಸಿದನು. | ثُمَّ ٱلسَّبِيلَ يَسَّرَهُۥ ﴿٢٠﴾ |
| 21. | ನಂತರ ಅವನಿಗೆ ಮರಣವನ್ನು ನೀಡಿ ಸಮಾಧಿಯಲ್ಲಿ ದಫನ ಮಾಡಿಸಿದನು. | ثُمَّ أَمَاتَهُۥ فَأَقْبَرَهُۥ ﴿٢١﴾ |
| 22. | ನಂತರ ಅವನು ಇಚ್ಛಿಸುವಾಗ ಅವನಿಗೆ ಪುನಃ ಜೀವ ನೀಡಿ ಎಬ್ಬಿಸುವನು. | ثُمَّ إِذَا شَآءَ أَنشَرَهُۥ ﴿٢٢﴾ |
| 23. | ಇಲ್ಲವೇ ಇಲ್ಲ. ಅವನು ಇಲ್ಲಿಯ ತನಕ ಅಲ್ಲಾಹನ ಆಜ್ಞೆಗಳನ್ನು ಪಾಲಿಸಲಿಲ್ಲ. | كَلَّا لَمَّا يَقْضِ مَآ أَمَرَهُۥ ﴿٢٣﴾ |
| 24. | ಮನುಷ್ಯನು ತನ್ನ ಆಹಾರವನ್ನು ನೋಡಲಿ. | فَلْيَنظُرِ ٱلْإِنسَٰنُ إِلَىٰ طَعَامِهِۦٓ ﴿٢٤﴾ |
| 25. | ನಾವು ರಭಸವಾಗಿ ಮಳೆಯನ್ನು ಸುರಿಸಿದೆವು. | أَنَّا صَبَبْنَا ٱلْمَآءَ صَبًّا ﴿٢٥﴾ |
| 26. | ನಂತರ ಭೂಮಿಯನ್ನು ಸರಿಯಾದ ರೀತಿಯಲ್ಲಿ ಸೀಳಿದೆವು. | ثُمَّ شَقَقْنَا ٱلْأَرْضَ شَقًّا ﴿٢٦﴾ |
| 27. | ನಂತರ ಅದರಲ್ಲಿ ಧಾನ್ಯವನ್ನು ಬೆಳೆಸಿದೆವು. | فَأَنۢبَتْنَا فِيهَا حَبًّا ﴿٢٧﴾ |
| 28. | ದ್ರಾಕ್ಷಿ ಮತ್ತು ತರಕಾರಿಗಳನ್ನು, | وَعِنَبًا وَقَضْبًا ﴿٢٨﴾ |
| 29. | ಆಲಿವ್ ಮತ್ತು ಖರ್ಜೂರ ಮರಗಳನ್ನು, | وَزَيْتُونًا وَنَخْلًا ﴿٢٩﴾ |
| 30. | ದಟ್ಟವಾದ ತೋಟಗಳನ್ನು. | وَحَدَآئِقَ غُلْبًا ﴿٣٠﴾ |
| 31. | ಹಣ್ಣು-ಹಂಪಲುಗಳನ್ನು ಮತ್ತು ಹುಲ್ಲುಗಾವಲುಗಳನ್ನು. | وَفَٰكِهَةً وَأَبًّا ﴿٣١﴾ |
| 32. | ನಿಮ್ಮ ಮತ್ತು ನಿಮ್ಮ ಜಾನುವಾರುಗಳ ಉಪಯೋಗಕ್ಕಾಗಿ. | مَّتَٰعًا لَّكُمْ وَلِأَنْعَٰمِكُمْ ﴿٣٢﴾ |
| 33. | ಕಿವಿಯನ್ನು ಕಿವುಡುಗೊಳಿಸುವ ಆ ಸದ್ದು (ಪುನರುತ್ಥಾನ) ಬಂದಾಗ. | فَإِذَا جَآءَتِ ٱلصَّآخَّةُ ﴿٣٣﴾ |
| 34. | ಅಂದು ಮನುಷ್ಯನು ತನ್ನ ಸಹೋದರನಿಂದ ದೂರ ಓಡುವನು. | يَوْمَ يَفِرُّ ٱلْمَرْءُ مِنْ أَخِيهِ ﴿٣٤﴾ |

35. ತನ್ನ ತಂದೆ-ತಾಯಿಗಳಿಂದ. وَأُمِّهِۦ وَأَبِيهِ ﴿٣٥﴾

36. ತನ್ನ ಮಡದಿ-ಮಕ್ಕಳಿಂದ. وَصَٰحِبَتِهِۦ وَبَنِيهِ ﴿٣٦﴾

37. ಅಂದು ಅವರಲ್ಲಿ ಪ್ರತಿಯೊಬ್ಬ ವ್ಯಕ್ತಿಗೂ ಇತರರ ಕಡೆಗೆ ಗಮನಕೊಡಲಾಗದಷ್ಟು ತನ್ನದೇ ಆದ ಆಲೋಚನೆಗಳಿರುವುವು. لِكُلِّ ٱمۡرِيٕٖ مِّنۡهُمۡ يَوۡمَئِذٖ شَأۡنٞ يُغۡنِيهِ ﴿٣٧﴾

38. ಅಂದು ಬಹಳಷ್ಟು ಮುಖಗಳು ಪ್ರಸನ್ನವಾಗಿರುವುವು. وُجُوهٞ يَوۡمَئِذٖ مُّسۡفِرَةٞ ﴿٣٨﴾

39. ಅವು ಕಿಲಕಿಲ ನಗುತ್ತಿರುವುವು ಮತ್ತು ಸಂತೋಷದಿಂದಿರುವುವು. ضَاحِكَةٞ مُّسۡتَبۡشِرَةٞ ﴿٣٩﴾

40. ಅಂದು ಬಹಳಷ್ಟು ಮುಖಗಳಿಗೆ ಧೂಳು ಮೆತ್ತಿಕೊಂಡಿರುವುದು. وَوُجُوهٞ يَوۡمَئِذٍ عَلَيۡهَا غَبَرَةٞ ﴿٤٠﴾

41. ಅವುಗಳನ್ನು ಕಾರ್ಗತ್ತಲೆಯು ಕವಿದಿರುವುದು. تَرۡهَقُهَا قَتَرَةٌ ﴿٤١﴾

42. ಅವರೇ ಸತ್ಯನಿಷೇಧಿಗಳು ಮತ್ತು ದುಷ್ಕರ್ಮಿಗಳು. أُوْلَٰٓئِكَ هُمُ ٱلۡكَفَرَةُ ٱلۡفَجَرَةُ ﴿٤٢﴾

# 81. ಅತ್ತಕ್ವೀರ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಸೂರ್ಯನನ್ನು ಹೊದಿಯಲಾಗುವಾಗ. إِذَا ٱلشَّمۡسُ كُوِّرَتۡ ﴿١﴾

2. ನಕ್ಷತ್ರಗಳು ಪ್ರಕಾಶರಹಿತವಾಗುವಾಗ. وَإِذَا ٱلنُّجُومُ ٱنكَدَرَتۡ ﴿٢﴾

3. ಪರ್ವತಗಳನ್ನು ಚಲಿಸುವಂತೆ ಮಾಡಲಾಗುವಾಗ. وَإِذَا ٱلۡجِبَالُ سُيِّرَتۡ ﴿٣﴾

4. ಪೂರ್ಣ ಬಸುರಿಗಳಾದ ಒಂಟೆಗಳನ್ನು ಉಪೇಕ್ಷಿಸಲಾಗುವಾಗ.[1] وَإِذَا ٱلۡعِشَارُ عُطِّلَتۡ ﴿٤﴾

5. ವನ್ಯ ಮೃಗಗಳನ್ನು ಒಟ್ಟುಗೂಡಿಸಲಾಗುವಾಗ.[2] وَإِذَا ٱلۡوُحُوشُ حُشِرَتۡ ﴿٥﴾

6. ಸಮುದ್ರಗಳನ್ನು ಧಗಧಗನೆ ಉರಿಸಲಾಗುವಾಗ. وَإِذَا ٱلۡبِحَارُ سُجِّرَتۡ ﴿٦﴾

7. ಆತ್ಮಗಳನ್ನು (ದೇಹಗಳೊಂದಿಗೆ) ಜೋಡಿಸಲಾಗುವಾಗ.[3] وَإِذَا ٱلنُّفُوسُ زُوِّجَتۡ ﴿٧﴾

8. ಜೀವಂತ ಹೂಳಲಾದ ಹೆಣ್ಣು ಮಗುವಿನೊಂದಿಗೆ ಕೇಳಲಾಗುವಾಗ. وَإِذَا ٱلۡمَوۡءُۥدَةُ سُئِلَتۡ ﴿٨﴾

9. ಯಾವ ತಪ್ಪಿಗಾಗಿ ಅವಳನ್ನು ಕೊಲೆ ಮಾಡಲಾಯಿತೆಂದು. بِأَيِّ ذَنۢبٖ قُتِلَتۡ ﴿٩﴾

---

[1] ಪೂರ್ಣ ಬಸುರಿ ಒಂಟೆಗಳನ್ನು ಅರಬ್ಬರು ಅಮೂಲ್ಯ ಸಂಪತ್ತೆಂದು ಪರಿಗಣಿಸುತ್ತಿದ್ದರು.

[2] ಪುನರುತ್ಥಾನ ದಿನ ವನ್ಯ ಮೃಗಗಳನ್ನು ಕೂಡ ಒಟ್ಟುಗೂಡಿಸಲಾಗುವುದು.

[3] ಹೆಚ್ಚಿನ ವ್ಯಾಖ್ಯಾನಕಾರರ ಪ್ರಕಾರ ಇದರ ಅರ್ಥವೇನೆಂದರೆ, ಪುನರುತ್ಥಾನ ದಿನದಂದು ಜನರನ್ನು ಅವರದ್ದೇ ಗುಂಪುಗಳೊಂದಿಗೆ ಸೇರಿಸಲಾಗುವುದು. ಸತ್ಯವಿಶ್ವಾಸಿಗಳನ್ನು ಸತ್ಯವಿಶ್ವಾಸಿಗಳೊಂದಿಗೆ, ಸತ್ಯನಿಷೇಧಿಗಳನ್ನು ಸತ್ಯನಿಷೇಧಗಳೊಂದಿಗೆ, ಕಪಟ ವಿಶ್ವಾಸಿಗಳನ್ನು ಕಪಟ ವಿಶ್ವಾಸಿಗಳೊಂದಿಗೆ ಇತ್ಯಾದಿ.

| | | |
|---|---|---|
| 10. | ಕರ್ಮಪುಸ್ತಕಗಳನ್ನು ತೆರೆಯಲಾಗುವಾಗ. | وَإِذَا ٱلصُّحُفُ نُشِرَتۡ ١٠ |
| 11. | ಆಕಾಶವನ್ನು ಕಳಚಲಾಗುವಾಗ. | وَإِذَا ٱلسَّمَآءُ كُشِطَتۡ ١١ |
| 12. | ನರಕವನ್ನು ಧಗಧಗನೆ ಉರಿಸಲಾಗುವಾಗ. | وَإِذَا ٱلۡجَحِيمُ سُعِّرَتۡ ١٢ |
| 13. | ಸ್ವರ್ಗವನ್ನು ಸಮೀಪಕ್ಕೆ ತರಲಾಗುವಾಗ. | وَإِذَا ٱلۡجَنَّةُ أُزۡلِفَتۡ ١٣ |
| 14. | ಅಂದು ಪ್ರತಿಯೊಬ್ಬ ವ್ಯಕ್ತಿಯೂ ತಾನು ಏನು ತಂದಿರುವೆನೆಂದು ತಿಳಿಯುವನು. | عَلِمَتۡ نَفۡسٞ مَّآ أَحۡضَرَتۡ ١٤ |
| 15. | ನಾನು ಹಿಂದಕ್ಕೆ ಸರಿಯುವ ನಕ್ಷತ್ರಗಳ ಮೇಲೆ ಆಣೆ ಮಾಡುತ್ತೇನೆ. | فَلَآ أُقۡسِمُ بِٱلۡخُنَّسِ ١٥ |
| 16. | ಚಲಿಸುವ ಮತ್ತು ಅಪ್ರತ್ಯಕ್ಷವಾಗುವ (ನಕ್ಷತ್ರಗಳ ಮೇಲೆ). | ٱلۡجَوَارِ ٱلۡكُنَّسِ ١٦ |
| 17. | ರಾತ್ರಿಯ ಮೇಲೆ, ಅದು ಸರಿಯುವಾಗ. | وَٱلَّيۡلِ إِذَا عَسۡعَسَ ١٧ |
| 18. | ಪ್ರಭಾತದ ಮೇಲೆ, ಅದು ಬೆಳಗುವಾಗ. | وَٱلصُّبۡحِ إِذَا تَنَفَّسَ ١٨ |
| 19. | ನಿಶ್ಚಯವಾಗಿಯೂ ಇದು (ಕುರ್‌ಆನ್) ಒಬ್ಬ ಗೌರವಾನ್ವಿತ ದೂತರ (ಜಿಬ್ರೀಲ್) ಮಾತಾಗಿದೆ.[1] | إِنَّهُۥ لَقَوۡلُ رَسُولٖ كَرِيمٖ ١٩ |
| 20. | ಅವರು ಅತ್ಯಂತ ಶಕ್ತಿಶಾಲಿ ಮತ್ತು ಸಿಂಹಾಸನದ ಒಡೆಯನಾದ ಅಲ್ಲಾಹನ ಬಳಿ ಉನ್ನತ ಪದವಿಯುಳ್ಳವರಾಗಿದ್ದಾರೆ. | ذِي قُوَّةٍ عِندَ ذِي ٱلۡعَرۡشِ مَكِينٖ ٢٠ |
| 21. | (ಆಕಾಶಲೋಕದಲ್ಲಿ) ಅವರನ್ನು ಅನುಸರಿಸಲಾಗುತ್ತದೆ ಮತ್ತು ಅವರು ವಿಶ್ವಾಸಯೋಗ್ಯರಾಗಿದ್ದಾರೆ. | مُّطَاعٖ ثَمَّ أَمِينٖ ٢١ |
| 22. | ನಿಶ್ಚಯವಾಗಿಯೂ ನಿಮ್ಮ ಸಂಗಡಿಗರು (ಪ್ರವಾದಿ) ಮಾನಸಿಕ ಅಸ್ವಸ್ಥರಲ್ಲ. | وَمَا صَاحِبُكُم بِمَجۡنُونٖ ٢٢ |
| 23. | ಅವರು ಅವರನ್ನು (ಜಿಬ್ರೀಲರನ್ನು) ಪ್ರತ್ಯಕ್ಷ ದಿಗಂತದಲ್ಲಿ ನೋಡಿದ್ದಾರೆ. | وَلَقَدۡ رَءَاهُ بِٱلۡأُفُقِ ٱلۡمُبِينِ ٢٣ |
| 24. | ಅವರು ಅದೃಶ್ಯ ವಿಷಯಗಳನ್ನು ತಿಳಿಸುವ ವಿಷಯದಲ್ಲಿ ಜಿಪುಣತನ ತೋರುವುದಿಲ್ಲ.[2] | وَمَا هُوَ عَلَى ٱلۡغَيۡبِ بِضَنِينٖ ٢٤ |
| 25. | ಇದು (ಕುರ್‌ಆನ್) ಬಹಿಷ್ಕೃತನಾದ ಶೈತಾನನ ಮಾತುಗಳಲ್ಲ. | وَمَا هُوَ بِقَوۡلِ شَيۡطَٰنٖ رَّجِيمٖ ٢٥ |
| 26. | ಆದರೂ ನೀವು ಎಲ್ಲಿಗೆ ಹೋಗುತ್ತಿದ್ದೀರಿ? | فَأَيۡنَ تَذۡهَبُونَ ٢٦ |

[1] ಅಂದರೆ ಅವರು (ಜಿಬ್ರೀಲ್) ಇದನ್ನು ಅಲ್ಲಾಹನ ಬಳಿಯಿಂದ ಪ್ರವಾದಿಯವರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ತಲುಪಿಸುತ್ತಿದ್ದಾರೆ.

[2] ಅಂದರೆ ಪ್ರವಾದಿಯವರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ತಿಳಿಸಿಕೊಡಲಾಗುವ ವಿಷಯಗಳೆಲ್ಲವನ್ನೂ ಅವರು ಜನರಿಗೆ ತಲುಪಿಸುತ್ತಿದ್ದಾರೆ. ಅದರಲ್ಲಿ ಅವರು ಸ್ವಲ್ಪವೂ ಜಿಪುಣತನ ತೋರಿಸುವುದಿಲ್ಲ.

27. ಇದು ಸರ್ವಲೋಕದ ಜನರಿಗೆ ಒಂದು ಉಪದೇಶವಾಗಿದೆ. | إِنۡ هُوَ إِلَّا ذِكۡرٞ لِّلۡعَٰلَمِينَ ٢٧

28. (ವಿಶೇಷವಾಗಿ) ನಿಮ್ಮ ಪೈಕಿ ನೇರ ಮಾರ್ಗದಲ್ಲಿ ಚಲಿಸಲು ಇಚ್ಛಿಸುವವರಿಗೆ. | لِمَن شَآءَ مِنكُمۡ أَن يَسۡتَقِيمَ ٢٨

29. ಸರ್ವಲೋಕಗಳ ಪರಿಪಾಲಕನಾದ ಅಲ್ಲಾಹು ಇಚ್ಛಿಸದೆ ನೀವು ಇಚ್ಛಿಸುವುದಿಲ್ಲ. | وَمَا تَشَآءُونَ إِلَّآ أَن يَشَآءَ ٱللَّهُ رَبُّ ٱلۡعَٰلَمِينَ ٢٩

# 82. ಅಲ್-ಇನ್‌ಫಿತಾರ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಆಕಾಶವು ಒಡೆದು ಸೀಳುವಾಗ. | إِذَا ٱلسَّمَآءُ ٱنفَطَرَتۡ ١

2. ನಕ್ಷತ್ರಗಳು ಉದುರಿ ಬೀಳುವಾಗ. | وَإِذَا ٱلۡكَوَاكِبُ ٱنتَثَرَتۡ ٢

3. ಸಮುದ್ರಗಳು ಉಕ್ಕಿ ಹರಿಯುವಾಗ. | وَإِذَا ٱلۡبِحَارُ فُجِّرَتۡ ٣

4. ಸಮಾಧಿಗಳು ಬುಡಮೇಲಾಗುವಾಗ. | وَإِذَا ٱلۡقُبُورُ بُعۡثِرَتۡ ٤

5. ಆಗ ಮನುಷ್ಯನು ತಾನು ಮುಂದಕ್ಕೆ ಕಳುಹಿಸಿದ ಮತ್ತು ಹಿಂದೆ ಉಳಿಸಿದ (ಕರ್ಮಗಳನ್ನು) ತಿಳಿಯುವನು. | عَلِمَتۡ نَفۡسٞ مَّا قَدَّمَتۡ وَأَخَّرَتۡ ٥

6. ಓ ಮನುಷ್ಯನೇ! ಅತ್ಯುದಾರಿಯಾದ ನಿನ್ನ ಪರಿಪಾಲಕನ (ಅಲ್ಲಾಹನ) ವಿಷಯದಲ್ಲಿ ನಿನ್ನನ್ನು ವಂಚಿಸಿದ್ದೇನು? | يَٰٓأَيُّهَا ٱلۡإِنسَٰنُ مَا غَرَّكَ بِرَبِّكَ ٱلۡكَرِيمِ ٦

7. ಅವನು (ಅಲ್ಲಾಹು) ಯಾರೆಂದರೆ ನಿನ್ನನ್ನು ಸೃಷ್ಟಿಸಿದವನು, ನಿನ್ನನ್ನು ಸರಿಪಡಿಸಿದವನು ಮತ್ತು ನಿನ್ನನ್ನು ಸಮತೋಲನಗೊಳಿಸಿದವನು. | ٱلَّذِي خَلَقَكَ فَسَوَّىٰكَ فَعَدَلَكَ ٧

8. ಅವನು ಇಚ್ಛಿಸಿದ ರೂಪದಲ್ಲಿ ನಿನ್ನನ್ನು ಜೋಡಿಸಿದವನು. | فِيٓ أَيِّ صُورَةٖ مَّا شَآءَ رَكَّبَكَ ٨

9. ಇಲ್ಲವೇ ಇಲ್ಲ, ವಾಸ್ತವವಾಗಿ ನೀವು ಪ್ರತಿಫಲದ ದಿನವನ್ನು ನಿಷೇಧಿಸುತ್ತಿದ್ದೀರಿ. | كَلَّا بَلۡ تُكَذِّبُونَ بِٱلدِّينِ ٩

10. ನಿಶ್ಚಯವಾಗಿಯೂ ನಿಮ್ಮ ಮೇಲೆ ನಿಗಾ ವಹಿಸುವವರಿದ್ದಾರೆ. | وَإِنَّ عَلَيۡكُمۡ لَحَٰفِظِينَ ١٠

11. ಗೌರವಾನ್ವಿತ ಬರಹಗಾರರು. | كِرَامٗا كَٰتِبِينَ ١١

12. ನೀವು ಮಾಡುವುದೆಲ್ಲವನ್ನೂ ಅವರು ತಿಳಿಯುತ್ತಾರೆ. | يَعۡلَمُونَ مَا تَفۡعَلُونَ ١٢

13. ನಿಶ್ಚಯವಾಗಿಯೂ ಸತ್ಕರ್ಮಿಗಳು ಸುಖದ ಸುಪ್ಪತ್ತಿಗೆಯಲ್ಲಿರುವರು. | إِنَّ ٱلۡأَبۡرَارَ لَفِي نَعِيمٖ ١٣

14. ನಿಶ್ಚಯವಾಗಿಯೂ ದುಷ್ಕರ್ಮಿಗಳು ಧಗಧಗಿಸುವ ನರಕದಲ್ಲಿರುವರು. وَإِنَّ ٱلۡفُجَّارَ لَفِي جَحِيمٖ ﴿١٤﴾

15. ಪ್ರತಿಫಲ ದಿನದಂದು ಅವರು ಅದನ್ನು ಪ್ರವೇಶಿಸುವರು. يَصۡلَوۡنَهَا يَوۡمَ ٱلدِّينِ ﴿١٥﴾

16. ಅವರಿಗೆ ಅದರಿಂದ ಅನುಪಸ್ಥಿತರಾಗಲು ಸಾಧ್ಯವಾಗುವುದಿಲ್ಲ. وَمَا هُمۡ عَنۡهَا بِغَآئِبِينَ ﴿١٦﴾

17. ಪ್ರತಿಫಲದ ದಿನ ಏನೆಂದು ನಿಮಗೇನು ಗೊತ್ತು? وَمَآ أَدۡرَىٰكَ مَا يَوۡمُ ٱلدِّينِ ﴿١٧﴾

18. ಪುನಃ (ಕೇಳುತ್ತೇನೆ). ಪ್ರತಿಫಲದ ದಿನ ಏನೆಂದು ನಿಮಗೇನು ಗೊತ್ತು? ثُمَّ مَآ أَدۡرَىٰكَ مَا يَوۡمُ ٱلدِّينِ ﴿١٨﴾

19. ಅಂದು ಯಾವುದೇ ವ್ಯಕ್ತಿ ಇನ್ನೊಬ್ಬ ವ್ಯಕ್ತಿಗಾಗಿ ಏನೂ ಅಧೀನದಲ್ಲಿಟ್ಟುಕೊಳ್ಳುವುದಿಲ್ಲ! ಅಂದು ಎಲ್ಲಾ ಆಜ್ಞೆಗಳು ಅಲ್ಲಾಹನದ್ದಾಗಿರುವುದು. يَوۡمَ لَا تَمۡلِكُ نَفۡسٞ لِّنَفۡسٖ شَيۡـٔٗاۖ وَٱلۡأَمۡرُ يَوۡمَئِذٖ لِّلَّهِ ﴿١٩﴾

# 83. ಅಲ್-ಮುತಫ್ಫಿಫೀನ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಅಳತೆ ಮತ್ತು ತೂಕದಲ್ಲಿ ಕಡಿಮೆ ಮಾಡುವವರಿಗೆ ಮಹಾ ನಾಶವಿದೆ. وَيۡلٞ لِّلۡمُطَفِّفِينَ ﴿١﴾

2. ಅವರು ಯಾರೆಂದರೆ ಜನರಿಂದ ಅಳತೆ ಮಾಡಿ ಪಡೆಯುವಾಗ ಪೂರ್ಣವಾಗಿ ಪಡೆಯುವವರು. ٱلَّذِينَ إِذَا ٱكۡتَالُواْ عَلَى ٱلنَّاسِ يَسۡتَوۡفُونَ ﴿٢﴾

3. ಆದರೆ ಜನರಿಗೆ ಅಳತೆ ಮಾಡಿ ಕೊಡುವಾಗ ಅಥವಾ ತೂಕ ಮಾಡಿ ಕೊಡುವಾಗ ಕಡಿಮೆ ಮಾಡುವವರು. وَإِذَا كَالُوهُمۡ أَو وَّزَنُوهُمۡ يُخۡسِرُونَ ﴿٣﴾

4. ಮರಣಾನಂತರ ಅವರಿಗೆ ಪುನಃ ಜೀವ ನೀಡಿ ಎಬ್ಬಿಸಲಾಗು-ವುದೆಂಬ ಪ್ರಜ್ಞೆ ಅವರಿಗಿಲ್ಲವೇ? أَلَا يَظُنُّ أُوْلَٰٓئِكَ أَنَّهُم مَّبۡعُوثُونَ ﴿٤﴾

5. ಆ ಮಹಾ ದಿನಕ್ಕಾಗಿ. لِيَوۡمٍ عَظِيمٖ ﴿٥﴾

6. ಜನರೆಲ್ಲರೂ ಸರ್ವಲೋಕಗಳ ಪರಿಪಾಲಕನ (ಅಲ್ಲಾಹನ) ಮುಂದೆ ಎದ್ದು ನಿಲ್ಲುವ ದಿನ. يَوۡمَ يَقُومُ ٱلنَّاسُ لِرَبِّ ٱلۡعَٰلَمِينَ ﴿٦﴾

7. ನಿಶ್ಚಯವಾಗಿಯೂ ದುಷ್ಕರ್ಮಿಗಳ ಕರ್ಮದಾಖಲೆಯು ಸಿಜ್ಜೀನ್‌ನಲ್ಲಿದೆ. كَلَّآ إِنَّ كِتَٰبَ ٱلۡفُجَّارِ لَفِي سِجِّينٖ ﴿٧﴾

8. ಸಿಜ್ಜೀನ್ ಏನೆಂದು ನಿಮಗೇನು ಗೊತ್ತು? وَمَآ أَدۡرَىٰكَ مَا سِجِّينٞ ﴿٨﴾

| | | |
|---|---|---|
| 9. | ಅದು ನಮೂದಿಸಲಾದ ಪುಸ್ತಕವಾಗಿದೆ. | كِتَٰبٞ مَّرۡقُومٞ ٩ |
| 10. | ಅಂದು ನಿಷೇಧಿಸಿದವರಿಗೆ ಮಹಾ ನಾಶವಿದೆ. | وَيۡلٞ يَوۡمَئِذٖ لِّلۡمُكَذِّبِينَ ١٠ |
| 11. | ಅವರು ಯಾರೆಂದರೆ ಪ್ರತಿಫಲ ದಿನವನ್ನು ನಿಷೇಧಿಸುವವರು. | ٱلَّذِينَ يُكَذِّبُونَ بِيَوۡمِ ٱلدِّينِ ١١ |
| 12. | ಎಲ್ಲೆ ಮೀರಿ ನಡೆಯುವವರು ಮತ್ತು ಮಹಾಪಾಪಿಗಳ ಹೊರತು ಇನ್ನಾರೂ ಅದನ್ನು ನಿಷೇಧಿಸುವುದಿಲ್ಲ. | وَمَا يُكَذِّبُ بِهِۦٓ إِلَّا كُلُّ مُعۡتَدٍ أَثِيمٍ ١٢ |
| 13. | ಅವನಿಗೆ ನಮ್ಮ ವಚನಗಳನ್ನು ಓದಿಕೊಡಲಾದರೆ ಅದನ್ನು "ಪ್ರಾಚೀನ ಕಾಲದ ಜನರ ಪುರಾಣಗಳು" ಎನ್ನುತ್ತಾನೆ. | إِذَا تُتۡلَىٰ عَلَيۡهِ ءَايَٰتُنَا قَالَ أَسَٰطِيرُ ٱلۡأَوَّلِينَ ١٣ |
| 14. | ಅಲ್ಲ, ಅವರು ಮಾಡುತ್ತಿದ್ದ ದುಷ್ಕರ್ಮಗಳ ಕಾರಣ ಕಪ್ಪುಕಲೆಗಳು ಅವರ ಹೃದಯಗಳನ್ನು ಆವರಿಸಿಕೊಂಡಿವೆ. | كَلَّاۖ بَلۡۜ رَانَ عَلَىٰ قُلُوبِهِم مَّا كَانُواْ يَكۡسِبُونَ ١٤ |
| 15. | ಅಲ್ಲ, ಅಂದು ಅವರು ಅವರ ಪರಿಪಾಲಕನನ್ನು (ಅಲ್ಲಾಹನನ್ನು) ದರ್ಶಿಸದಂತೆ ಪರದೆಯಲ್ಲಿ ಹಾಕಲಾಗುವರು.[1] | كَلَّآ إِنَّهُمۡ عَن رَّبِّهِمۡ يَوۡمَئِذٖ لَّمَحۡجُوبُونَ ١٥ |
| 16. | ನಂತರ ನಿಶ್ಚಯವಾಗಿಯೂ ಅವರನ್ನು ಧಗಧಗಿಸುವ ನರಕಕ್ಕೆ ಎಸೆಯಲಾಗುವುದು. | ثُمَّ إِنَّهُمۡ لَصَالُواْ ٱلۡجَحِيمِ ١٦ |
| 17. | ನಂತರ ಅವರೊಡನೆ ಹೇಳಲಾಗುವುದು: "ಇದೇ ನೀವು ನಿಷೇಧಿಸುತ್ತಿದ್ದ ನರಕ." | ثُمَّ يُقَالُ هَٰذَا ٱلَّذِي كُنتُم بِهِۦ تُكَذِّبُونَ ١٧ |
| 18. | ಇಲ್ಲವೇ ಇಲ್ಲ. ನಿಶ್ಚಯವಾಗಿಯೂ ಸಜ್ಜನರ ಕರ್ಮದಾಖಲೆಯು ಇಲ್ಲಿಯ್ಯೂನ್‌ನಲ್ಲಿದೆ. | كَلَّآ إِنَّ كِتَٰبَ ٱلۡأَبۡرَارِ لَفِي عِلِّيِّينَ ١٨ |
| 19. | ಇಲ್ಲಿಯ್ಯೂನ್ ಏನೆಂದು ನಿಮಗೇನು ಗೊತ್ತು? | وَمَآ أَدۡرَىٰكَ مَا عِلِّيُّونَ ١٩ |
| 20. | ಅದು ನಮೂದಿಸಲಾದ ಪುಸ್ತಕವಾಗಿದೆ. | كِتَٰبٞ مَّرۡقُومٞ ٢٠ |
| 21. | ಸಾಮೀಪ್ಯ ಪಡೆದವರು (ದೇವದೂತರು) ಅದರ ಬಳಿ ಉಪಸ್ಥಿತರಾಗುವರು. | يَشۡهَدُهُ ٱلۡمُقَرَّبُونَ ٢١ |
| 22. | ನಿಶ್ಚಯವಾಗಿಯೂ ಸಜ್ಜನರು ಸುಖಾಡಂಬರಗಳಲ್ಲಿರುವರು. | إِنَّ ٱلۡأَبۡرَارَ لَفِي نَعِيمٍ ٢٢ |
| 23. | ಸುಖಾಸನಗಳಲ್ಲಿ ಕುಳಿತು ನೋಡುತ್ತಿರುವರು. | عَلَى ٱلۡأَرَآئِكِ يَنظُرُونَ ٢٣ |
| 24. | ನೀವು ಅವರ ಮುಖಗಳಲ್ಲಿ ಆ ಸುಖಗಳ ಹೊಳಪನ್ನು ಗುರುತಿಸುವಿರಿ. | تَعۡرِفُ فِي وُجُوهِهِمۡ نَضۡرَةَ ٱلنَّعِيمِ ٢٤ |
| 25. | ಅವರಿಗೆ ಮೊಹರು ಹಾಕಲಾದ ಶುದ್ಧ ಮದ್ಯವನ್ನು ಕುಡಿಯಲು | يُسۡقَوۡنَ مِن رَّحِيقٖ مَّخۡتُومٍ ٢٥ |

[1] ಸತ್ಯವಿಶ್ವಾಸಿಗಳು ಪರಲೋಕದಲ್ಲಿ ಅಲ್ಲಾಹನ ದರ್ಶನ ಪಡೆಯುವರು. ಆದರೆ ಸತ್ಯನಿಷೇಧಿಗಳಿಗೆ ಆ ಭಾಗ್ಯವಿರುವುದಿಲ್ಲ.

ನೀಡಲಾಗುವುದು.

26. ಅದರ ಮೊಹರು ಕಸ್ತೂರಿಯಾಗಿದೆ. ಪೈಪೋಟಿ ನಡೆಸುವವರು ಇದಕ್ಕಾಗಿ ಪೈಪೋಟಿ ನಡೆಸಲಿ. — خِتَٰمُهُۥ مِسۡكٞۚ وَفِي ذَٰلِكَ فَلۡيَتَنَافَسِ ٱلۡمُتَنَٰفِسُونَ ٢٦

27. ಅದರ ಮಿಶ್ರಣವು ತಸ್ನೀಮ್[1] ಆಗಿದೆ. — وَمِزَاجُهُۥ مِن تَسۡنِيمٍ ٢٧

28. ಅಂದರೆ ಸಾಮೀಪ್ಯ ಪಡೆದವರು ಕುಡಿಯುವ ಚಿಲುಮೆಯ ನೀರು. — عَيۡنٗا يَشۡرَبُ بِهَا ٱلۡمُقَرَّبُونَ ٢٨

29. ನಿಶ್ಚಯವಾಗಿಯೂ (ಇಹಲೋಕದಲ್ಲಿ) ಅಪರಾಧಿಗಳು ಸತ್ಯವಿಶ್ವಾ-ಸಿಗಳನ್ನು ತಮಾಷೆ ಮಾಡಿ ನಗುತ್ತಿದ್ದರು. — إِنَّ ٱلَّذِينَ أَجۡرَمُواْ كَانُواْ مِنَ ٱلَّذِينَ ءَامَنُواْ يَضۡحَكُونَ ٢٩

30. ಅವರು ಸತ್ಯವಿಶ್ವಾಸಿಗಳ ಬಳಿಯಿಂದ ಹೋಗುವಾಗ ಒಬ್ಬರು ಇನ್ನೊಬ್ಬರಿಗೆ ಕಣ್ಣಿನಿಂದ ಸನ್ನೆ ಮಾಡುತ್ತಿದ್ದರು. — وَإِذَا مَرُّواْ بِهِمۡ يَتَغَامَزُونَ ٣٠

31. ಅವರ ತಮ್ಮ ಮನೆಯವರ ಬಳಿಗೆ ಮರಳುವಾಗ ಮೋಜು ಮಾಡುತ್ತಾ ಮರಳುತ್ತಿದ್ದರು. — وَإِذَا ٱنقَلَبُوٓاْ إِلَىٰٓ أَهۡلِهِمُ ٱنقَلَبُواْ فَكِهِينَ ٣١

32. ಸತ್ಯವಿಶ್ವಾಸಿಗಳನ್ನು ಕಂಡರೆ, “ನಿಶ್ಚಯವಾಗಿಯೂ ಇವರೆಲ್ಲರೂ ದಾರಿತಪ್ಪಿದವರು” ಎನ್ನುತ್ತಿದ್ದರು. — وَإِذَا رَأَوۡهُمۡ قَالُوٓاْ إِنَّ هَٰٓؤُلَآءِ لَضَآلُّونَ ٣٢

33. ಇವರನ್ನು ಅವರ (ಸತ್ಯವಿಶ್ವಾಸಿಗಳ) ಕಾವಲುಗಾರರಾಗಿ ಮಾಡಿ ಕಳುಹಿಸಲಾಗಿಲ್ಲ. — وَمَآ أُرۡسِلُواْ عَلَيۡهِمۡ حَٰفِظِينَ ٣٣

34. ಆದರೆ ಇಂದು ಸತ್ಯವಿಶ್ವಾಸಿಗಳು ಸತ್ಯನಿಷೇಧಿಗಳನ್ನು ನೋಡಿ ನಗುವರು. — فَٱلۡيَوۡمَ ٱلَّذِينَ ءَامَنُواْ مِنَ ٱلۡكُفَّارِ يَضۡحَكُونَ ٣٤

35. ಅವರು ಸುಖಾಸನಗಳಲ್ಲಿ ಕುಳಿತು ನೋಡುತ್ತಿರುವರು. — عَلَى ٱلۡأَرَآئِكِ يَنظُرُونَ ٣٥

36. ಆ ಸತ್ಯನಿಷೇಧಿಗಳಿಗೆ ಅವರು ಮಾಡಿದ ದುಷ್ಕರ್ಮಗಳ ಪ್ರತಿಫಲವನ್ನು ಪೂರ್ಣವಾಗಿ ನೀಡಲಾಗಿದೆಯೋ ಎಂದು. — هَلۡ ثُوِّبَ ٱلۡكُفَّارُ مَا كَانُواْ يَفۡعَلُونَ ٣٦

[1] ಇದು ಸ್ವರ್ಗದ ಎತ್ತರದ ಸ್ಥಳದಿಂದ ಹರಿದು ಬರುವ ತೊರೆ. ಇದು ಸ್ವರ್ಗ ಅತ್ಯುತ್ಕೃಷ್ಟ ನೀರಾಗಿದೆ.

# 84. ಅಲ್-ಇನ್‌ಶಿಕಾಕ್

بِسۡمِ ٱللَّهِ ٱلرَّحۡمَٰنِ ٱلرَّحِيمِ
ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

إِذَا ٱلسَّمَآءُ ٱنشَقَّتۡ ١
1. ಆಕಾಶವು ಒಡೆದು ಸೀಳುವಾಗ.

وَأَذِنَتۡ لِرَبِّهَا وَحُقَّتۡ ٢
2. ಅದು ತನ್ನ ಪರಿಪಾಲಕನ (ಅಲ್ಲಾಹನ) ಆಜ್ಞೆಗೆ ಕಿವಿಗೊಡುವಾಗ. ಅದು ಅದಕ್ಕೆ ಅರ್ಹವಾಗಿದೆ.[1]

وَإِذَا ٱلۡأَرۡضُ مُدَّتۡ ٣
3. ಭೂಮಿಯು ವಿಸ್ತರಿಸಲಾಗುವಾಗ.

وَأَلۡقَتۡ مَا فِيهَا وَتَخَلَّتۡ ٤
4. ಅದು ಅದರೊಳಗಿರುವುದನ್ನು ಹೊರಗೆಸೆದು ಬರಿದಾಗುವಾಗ.

وَأَذِنَتۡ لِرَبِّهَا وَحُقَّتۡ ٥
5. ಅದು ತನ್ನ ಪರಿಪಾಲಕನ (ಅಲ್ಲಾಹನ) ಆಜ್ಞೆಗೆ ಕಿವಿಗೊಡುವಾಗ. ಅದು ಅದಕ್ಕೆ ಅರ್ಹವಾಗಿದೆ.

يَٰٓأَيُّهَا ٱلۡإِنسَٰنُ إِنَّكَ كَادِحٌ إِلَىٰ رَبِّكَ كَدۡحٗا فَمُلَٰقِيهِ ٦
6. ಓ ಮನುಷ್ಯನೇ! ನೀನು ನಿನ್ನ ಪರಿಪಾಲಕನನ್ನು (ಅಲ್ಲಾಹನನ್ನು) ಭೇಟಿಯಾಗುವ ತನಕ ಎಲ್ಲಾ ರೀತಿಯ ಕಠಿಣ ಪರಿಶ್ರಮ ಮಾಡಿ ನಂತರ ಅವನನ್ನು ಭೇಟಿಯಾಗುವೆ.

فَأَمَّا مَنۡ أُوتِيَ كِتَٰبَهُۥ بِيَمِينِهِۦ ٧
7. ಆಗ ಯಾರಿಗೆ ಅವನ ಗ್ರಂಥವನ್ನು ಬಲಗೈಯಲ್ಲಿ ನೀಡಲಾಗುತ್ತದೋ,

فَسَوۡفَ يُحَاسَبُ حِسَابٗا يَسِيرٗا ٨
8. ಅವನನ್ನು ಅತ್ಯಂತ ಸರಳವಾಗಿ ವಿಚಾರಣೆ ಮಾಡಲಾಗುವುದು.

وَيَنقَلِبُ إِلَىٰٓ أَهۡلِهِۦ مَسۡرُورٗا ٩
9. ಅವನು ತನ್ನ ಮನೆಯವರ ಬಳಿಗೆ ಸಂತೋಷದಿಂದ ಮರಳುವನು.

وَأَمَّا مَنۡ أُوتِيَ كِتَٰبَهُۥ وَرَآءَ ظَهۡرِهِۦ ١٠
10. ಆದರೆ ಯಾರಿಗೆ ಅವನ ಗ್ರಂಥವನ್ನು ಬೆನ್ನ ಹಿಂದಿನಿಂದ ನೀಡಲಾಗುತ್ತದೋ.

فَسَوۡفَ يَدۡعُواْ ثُبُورٗا ١١
11. ಅವನು ಸಾವನ್ನು ಕರೆಯುವನು.

وَيَصۡلَىٰ سَعِيرًا ١٢
12. ಮತ್ತು ಧಗಧಗನೆ ಉರಿಯುವ ನರಕಾಗ್ನಿಯನ್ನು ಪ್ರವೇಶಿಸುವನು.

إِنَّهُۥ كَانَ فِيٓ أَهۡلِهِۦ مَسۡرُورًا ١٣
13. ನಿಶ್ಚಯವಾಗಿಯೂ ಅವನು (ಇಹಲೋಕದಲ್ಲಿ) ಅವನ ಮನೆಯವರೊಡನೆ ಸಂತೋಷವಾಗಿದ್ದನು.

---

[1] ಅಂದರೆ ಒಡೆದು ಸೀಳಾಗಬೇಕೆಂಬ ಆಜ್ಞೆ ಸಿಕ್ಕಿದ ಕೂಡಲೆ ಆಕಾಶವು ಆ ಆಜ್ಞೆಯನ್ನು ಅನುಸರಿಸುತ್ತದೆ. ಅಲ್ಲಾಹನ ಆಜ್ಞೆಗಳನ್ನು ಅನುಸರಿಸುವುದು ಅದಕ್ಕೆ ಅರ್ಹವಾಗಿದೆ. ಏಕೆಂದರೆ ಅದು ಅಲ್ಲಾಹನಿಗೆ ಸಂಪೂರ್ಣ ವಿಧೇಯವಾಗಿದೆ.

| | | |
|---|---|---|
| 14. | ಅಲ್ಲಾಹನ ಬಳಿಗೆ ಮರಳಿ ಹೋಗುವುದೇ ಇಲ್ಲವೆಂದು ಅವನು ಭಾವಿಸಿದ್ದನು. | إِنَّهُۥ ظَنَّ أَن لَّن يَحُورَ ١٤ |
| 15. | ಹೌದು! ನಿಶ್ಚಯವಾಗಿಯೂ ಅವನ ಪರಿಪಾಲಕನು (ಅಲ್ಲಾಹು) ಅವನನ್ನು ನೋಡುತ್ತಿದ್ದನು. | بَلَىٰٓۚ إِنَّ رَبَّهُۥ كَانَ بِهِۦ بَصِيرًا ١٥ |
| 16. | ನಾನು ಮುಸ್ಸಂಜೆಯ ಮೇಲೆ ಆಣೆ ಮಾಡುತ್ತೇನೆ. | فَلَآ أُقۡسِمُ بِٱلشَّفَقِ ١٦ |
| 17. | ರಾತ್ರಿಯ ಮೇಲೆ ಮತ್ತು ಅದು ಒಟ್ಟುಗೂಡಿಸುವ ವಸ್ತುಗಳ ಮೇಲಾಣೆ![1] | وَٱلَّيۡلِ وَمَا وَسَقَ ١٧ |
| 18. | ಚಂದ್ರನ ಮೇಲಾಣೆ! ಅದು ಪೂರ್ಣರೂಪವನ್ನು ಪಡೆಯುವಾಗ. | وَٱلۡقَمَرِ إِذَا ٱتَّسَقَ ١٨ |
| 19. | ನಿಶ್ಚಯವಾಗಿಯೂ ನೀವು ಒಂದು ಸ್ಥಿತಿಯಿಂದ ಇನ್ನೊಂದು ಸ್ಥಿತಿಗೆ ತಲುಪುತ್ತೀರಿ.[2] | لَتَرۡكَبُنَّ طَبَقًا عَن طَبَقٖ ١٩ |
| 20. | ಅವರಿಗೇನಾಗಿದೆ? ಅವರೇಕೆ ವಿಶ್ವಾಸವಿಡುವುದಿಲ್ಲ? | فَمَا لَهُمۡ لَا يُؤۡمِنُونَ ٢٠ |
| 21. | ಅವರಿಗೆ ಕುರ್‌ಆನನ್ನು ಓದಿಕೊಡಲಾದರೆ ಅವರು ಸಾಷ್ಟಾಂಗ ಮಾಡುವುದಿಲ್ಲ. | وَإِذَا قُرِئَ عَلَيۡهِمُ ٱلۡقُرۡءَانُ لَا يَسۡجُدُونَۤ ٢١ |
| 22. | ಆದರೆ ಆ ಸತ್ಯನಿಷೇಧಿಗಳು ನಿಷೇಧಿಸುತ್ತಿದ್ದಾರೆ. | بَلِ ٱلَّذِينَ كَفَرُواْ يُكَذِّبُونَ ٢٢ |
| 23. | ಅವರು ಅವರ ಒಡಲಲ್ಲಿ ಮುಚ್ಚಿಡುವುದನ್ನು ಅಲ್ಲಾಹು ಬಹಳ ಚೆನ್ನಾಗಿ ತಿಳಿಯುತ್ತಾನೆ. | وَٱللَّهُ أَعۡلَمُ بِمَا يُوعُونَ ٢٣ |
| 24. | ಅವರಿಗೆ ಯಾತನಾಮಯ ಶಿಕ್ಷೆಯ ಸುವಾರ್ತೆ ನೀಡಿರಿ. | فَبَشِّرۡهُم بِعَذَابٍ أَلِيمٍ ٢٤ |
| 25. | ಆದರೆ ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಇದಕ್ಕೆ ಹೊರತಾಗಿದ್ದಾರೆ. ಅವರಿಗೆ ಎಂದೂ ಮುಗಿಯದ ಪ್ರತಿಫಲವಿದೆ. | إِلَّا ٱلَّذِينَ ءَامَنُواْ وَعَمِلُواْ ٱلصَّٰلِحَٰتِ لَهُمۡ أَجۡرٌ غَيۡرُ مَمۡنُونِۭ ٢٥ |

[1] ಇರುಳಾಗುತ್ತಿದ್ದಂತೆ ಎಲ್ಲಾ ಜೀವಿಗಳು ತಮ್ಮ ವಸತಿಗಳಿಗೆ ಮತ್ತು ಗೂಡುಗಳಿಗೆ ಮರಳುತ್ತವೆ.

[2] ಅಂದರೆ ಪುನರುತ್ಥಾನ ದಿನ ಮನುಷ್ಯನು ಅನೇಕ ಎಡರು-ತೊಡರುಗಳನ್ನು ಬಹಳ ಕಷ್ಟದಿಂದ ಕ್ರಮಿಸಬೇಕಾಗುತ್ತದೆ. ಅವನಿಗೆ ಎದುರಾಗುವ ಪರಿಸ್ಥಿತಿಗಳು ಒಂದಕ್ಕಿಂತ ಇನ್ನೊಂದು ಕಷ್ಟವಾಗಿರುತ್ತವೆ.

# 85. ಅಲ್ -ಬುರೂಜ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ನಕ್ಷತ್ರ ಪುಂಜಗಳಿರುವ ಆಕಾಶದ ಮೇಲಾಣೆ! | وَٱلسَّمَآءِ ذَاتِ ٱلۡبُرُوجِ ١ |
| 2. | ವಾಗ್ದಾನ ಮಾಡಲಾದ ದಿನದ ಮೇಲಾಣೆ! | وَٱلۡيَوۡمِ ٱلۡمَوۡعُودِ ٢ |
| 3. | ಸಾಕ್ಷಿಯಾಗುವುದರ ಮತ್ತು ಸಾಕ್ಷಿ ವಹಿಸಲಾಗುವುದರ ಮೇಲಾಣೆ! | وَشَاهِدٖ وَمَشۡهُودٖ ٣ |
| 4. | ಹೊಂಡದವರು ನಾಶವಾದರು. | قُتِلَ أَصۡحَٰبُ ٱلۡأُخۡدُودِ ٤ |
| 5. | ಅದು (ಹೊಂಡ) ಇಂಧನ ತುಂಬಲಾದ ಬೆಂಕಿಯನ್ನು ಹೊಂದಿತ್ತು. | ٱلنَّارِ ذَاتِ ٱلۡوَقُودِ ٥ |
| 6. | ಅವರು ಅದರ ಸುತ್ತಲೂ ಕುಳಿತಿದ್ದ ಸಂದರ್ಭ. | إِذۡ هُمۡ عَلَيۡهَا قُعُودٞ ٦ |
| 7. | ಸತ್ಯವಿಶ್ವಾಸಿಗಳೊಂದಿಗೆ ಏನು ಮಾಡಲಾಗುತ್ತಿತ್ತೋ ಅದಕ್ಕೆ ಅವರು ಪ್ರತ್ಯಕ್ಷದರ್ಶಿಗಳಾಗಿದ್ದರು. | وَهُمۡ عَلَىٰ مَا يَفۡعَلُونَ بِٱلۡمُؤۡمِنِينَ شُهُودٞ ٧ |
| 8. | ಅವರು ಪ್ರಬಲನು ಮತ್ತು ಸ್ತುತ್ಯರ್ಹನಾದ ಅಲ್ಲಾಹನಲ್ಲಿ ವಿಶ್ವಾಸವಿಟ್ಟಿದ್ದರು ಎಂಬುದು ಹೊರತು ಅವರಿಂದ ಪ್ರತೀಕಾರ ಪಡೆಯಲು ಇವರಿಗೆ ಬೇರೆ ಯಾವುದೇ ಕಾರಣವಿರಲಿಲ್ಲ.[1] | وَمَا نَقَمُواْ مِنۡهُمۡ إِلَّآ أَن يُؤۡمِنُواْ بِٱللَّهِ ٱلۡعَزِيزِ ٱلۡحَمِيدِ ٨ |
| 9. | ಅವನು (ಅಲ್ಲಾಹು) ಯಾರೆಂದರೆ ಭೂಮ್ಯಾಕಾಶಗಳ ಸಾರ್ವಭೌಮತ್ವವು ಯಾರಿಗೆ ಸೇರಿದ್ದೋ ಅವನು. ಅಲ್ಲಾಹು ಎಲ್ಲ ವಿಷಯಗಳಿಗೂ ಸಾಕ್ಷಿಯಾಗಿದ್ದಾನೆ. | ٱلَّذِي لَهُۥ مُلۡكُ ٱلسَّمَٰوَٰتِ وَٱلۡأَرۡضِۚ وَٱللَّهُ عَلَىٰ كُلِّ شَيۡءٖ شَهِيدٌ ٩ |
| 10. | ಸತ್ಯವಿಶ್ವಾಸಿ ಪುರುಷರಿಗೆ ಮತ್ತು ಸತ್ಯವಿಶ್ವಾಸಿ ಮಹಿಳೆಯರಿಗೆ ಹಿಂಸೆ ನೀಡುವವರು ಮತ್ತು ಆ ಬಳಿಕ ಪಶ್ಚಾತ್ತಾಪ ಪಡದವರು ಯಾರೋ—ಅವರಿಗೆ ನರಕದ ಶಿಕ್ಷೆಯಿದೆ. ಅವರಿಗೆ ಸುಟ್ಟು ಕರಕಲಾಗುವ ಶಿಕ್ಷೆಯಿದೆ. | إِنَّ ٱلَّذِينَ فَتَنُواْ ٱلۡمُؤۡمِنِينَ وَٱلۡمُؤۡمِنَٰتِ ثُمَّ لَمۡ يَتُوبُواْ فَلَهُمۡ عَذَابُ جَهَنَّمَ وَلَهُمۡ عَذَابُ ٱلۡحَرِيقِ ١٠ |
| 11. | ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ ಅವರಿಗೆ ತಳಭಾಗದಿಂದ ನದಿಗಳು ಹರಿಯುವ ಸ್ವರ್ಗೋದ್ಯಾನಗಳಿವೆ. ಅದೇ ಅತಿದೊಡ್ಡ ವಿಜಯ. | إِنَّ ٱلَّذِينَ ءَامَنُواْ وَعَمِلُواْ ٱلصَّٰلِحَٰتِ لَهُمۡ جَنَّٰتٞ تَجۡرِي مِن تَحۡتِهَا ٱلۡأَنۡهَٰرُۚ ذَٰلِكَ ٱلۡفَوۡزُ ٱلۡكَبِيرُ ١١ |
| 12. | ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನ (ಅಲ್ಲಾಹನ) ಹಿಡಿತವು ಬಹಳ ಕಠೋರವಾಗಿದೆ. | إِنَّ بَطۡشَ رَبِّكَ لَشَدِيدٌ ١٢ |

[1] ಇಲ್ಲಿ ಹೇಳಲಾಗಿರುವುದು ಹೊಂಡಗಳನ್ನು ತೋಡಿ, ಅವುಗಳಲ್ಲಿ ಸೌದೆಗಳನ್ನು ತುಂಬಿಸಿ ಬೆಂಕಿಯುರಿಸಿ, ನಂತರ ಸತ್ಯವಿಶ್ವಾಸಿಗಳನ್ನು ಅವುಗಳಲ್ಲಿ ಜೀವಂತ ಉರಿಸಿದ ಒಂದು ದುಷ್ಟ ರಾಜ ಮತ್ತು ಅವನ ಅನುಯಾಯಿಗಳ ಬಗ್ಗೆಯಾಗಿದೆ.

13. ಅವನೇ ಪ್ರಥಮ ಬಾರಿ ಸೃಷ್ಟಿಸುವವನು ಮತ್ತು ಎರಡನೇ ಬಾರಿ ಸೃಷ್ಟಿಸುವವನು.
إِنَّهُۥ هُوَ يُبۡدِئُ وَيُعِيدُ ١٣

14. ಅವನು ಕ್ಷಮಿಸುವವನು ಮತ್ತು, ಅತಿಯಾಗಿ ಪ್ರೀತಿಸುವವನು.
وَهُوَ ٱلۡغَفُورُ ٱلۡوَدُودُ ١٤

15. ಅವನು ಸಿಂಹಾಸನದ ಒಡೆಯನು ಮತ್ತು ಪರಮೋನ್ನತನು.
ذُو ٱلۡعَرۡشِ ٱلۡمَجِيدُ ١٥

16. ತಾನು ಬಯಸುವುದೆಲ್ಲವನ್ನೂ ಕಾರ್ಯರೂಪಕ್ಕೆ ತರುವವನು.
فَعَّالٞ لِّمَا يُرِيدُ ١٦

17. ಸೈನ್ಯಗಳ ಸಮಾಚಾರವು ನಿಮಗೆ ತಲುಪಿದೆಯೇ?
هَلۡ أَتَىٰكَ حَدِيثُ ٱلۡجُنُودِ ١٧

18. ಫರೋಹ ಮತ್ತು ಸಮೂದ್ ಗೋತ್ರದವರ (ಸಮಾಚಾರ).
فِرۡعَوۡنَ وَثَمُودَ ١٨

19. ಆದರೆ ಸತ್ಯನಿಷೇಧಿಗಳು ನಿಷೇಧಿಸುತ್ತಲೇ ಇದ್ದಾರೆ.
بَلِ ٱلَّذِينَ كَفَرُواْ فِي تَكۡذِيبٖ ١٩

20. ಅಲ್ಲಾಹು ಅವರನ್ನು ಎಲ್ಲಾ ದಿಕ್ಕುಗಳಿಂದ ಆವರಿಸಿಕೊಂಡಿದ್ದಾನೆ.
وَٱللَّهُ مِن وَرَآئِهِم مُّحِيطُۢ ٢٠

21. ಆದರೆ ಇದು ಮಹತ್ವಪೂರ್ಣ ಕುರ್‌ಆನ್ ಆಗಿದೆ.
بَلۡ هُوَ قُرۡءَانٞ مَّجِيدٞ ٢١

22. ಇದನ್ನು ಸುರಕ್ಷಿತ ಫಲಕದಲ್ಲಿ ಬರೆದಿಡಲಾಗಿದೆ.
فِي لَوۡحٖ مَّحۡفُوظِۭ ٢٢

# 86. ಅತ್ತಾರಿಕ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ
بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಆಕಾಶದ ಮೇಲಾಣೆ. ರಾತ್ರಿಯಲ್ಲಿ ಪ್ರತ್ಯಕ್ಷವಾಗುವುದರ ಮೇಲಾಣೆ!
وَٱلسَّمَآءِ وَٱلطَّارِقِ ١

2. ರಾತ್ರಿಯಲ್ಲಿ ಪ್ರತ್ಯಕ್ಷವಾಗುವುದು ಏನೆಂದು ನಿಮಗೇನು ಗೊತ್ತು?
وَمَآ أَدۡرَىٰكَ مَا ٱلطَّارِقُ ٢

3. ಅದು ಬೆಳಗುವ ನಕ್ಷತ್ರವಾಗಿದೆ.
ٱلنَّجۡمُ ٱلثَّاقِبُ ٣

4. ನಿಗಾವಣೆಯಲ್ಲಿರುವ ದೇವದೂತರಿಲ್ಲದ ಯಾವುದೇ ವ್ಯಕ್ತಿಯೂ ಇಲ್ಲ.[1]
إِن كُلُّ نَفۡسٖ لَّمَّا عَلَيۡهَا حَافِظٞ ٤

5. ತನ್ನನ್ನು ಯಾವುದರಿಂದ ಸೃಷ್ಟಿಸಲಾಗಿದೆ ಎಂದು ಮನುಷ್ಯನು ನೋಡಿಕೊಳ್ಳಲಿ.
فَلۡيَنظُرِ ٱلۡإِنسَٰنُ مِمَّ خُلِقَ ٥

6. ಅವನನ್ನು ಚಿಮ್ಮುವ ದ್ರವದಿಂದ ಸೃಷ್ಟಿಸಲಾಗಿದೆ.
خُلِقَ مِن مَّآءٖ دَافِقٖ ٦

7. ಅದು ಬೆನ್ನು ಮತ್ತು ಪಕ್ಕೆಲುಬುಗಳ ನಡುವಿನಿಂದ ಹೊರಬರುತ್ತದೆ.
يَخۡرُجُ مِنۢ بَيۡنِ ٱلصُّلۡبِ وَٱلتَّرَآئِبِ ٧

[1] ಅಂದರೆ ಅಲ್ಲಾಹು ಪ್ರತಿಯೊಬ್ಬ ಮನುಷ್ಯನಿಗೂ ಅವನ ಒಳಿತು ಮತ್ತು ಕೆಡುಕುಗಳನ್ನು ದಾಖಲಿಸುವ ದೇವದೂತರುಗಳನ್ನು ನೇಮಿಸಿದ್ದಾನೆ.

8. ನಿಶ್ಚಯವಾಗಿಯೂ ಅವನನ್ನು ಮರಳಿ ತರಲು (ಮರಳಿ ಸೃಷ್ಟಿಸಲು) ಅಲ್ಲಾಹನಿಗೆ ಸಾಮರ್ಥ್ಯವಿದೆ. — إِنَّهُۥ عَلَىٰ رَجۡعِهِۦ لَقَادِرٞ ٨

9. ಮರೆಯಾಗಿರುವ ರಹಸ್ಯಗಳನ್ನು ತನಿಖೆ ಮಾಡಲಾಗುವ ದಿನ![1] — يَوۡمَ تُبۡلَى ٱلسَّرَآئِرُ ٩

10. ಆಗ ಮನುಷ್ಯನ ಬಳಿ ಯಾವುದೇ ಶಕ್ತಿ ಅಥವಾ ಸಹಾಯಕರು ಇರುವುದಿಲ್ಲ. — فَمَا لَهُۥ مِن قُوَّةٖ وَلَا نَاصِرٖ ١٠

11. ಮಳೆಯನ್ನು ಸುರಿಸುವ ಆಕಾಶದ ಮೇಲಾಣೆ! — وَٱلسَّمَآءِ ذَاتِ ٱلرَّجۡعِ ١١

12. ಸೀಳುವ ಭೂಮಿಯ ಮೇಲಾಣೆ! — وَٱلۡأَرۡضِ ذَاتِ ٱلصَّدۡعِ ١٢

13. ನಿಶ್ಚಯವಾಗಿಯೂ ಇದು (ಕುರ್ಆನ್) ನಿರ್ಣಾಯಕ ಮಾತಾಗಿದೆ. — إِنَّهُۥ لَقَوۡلٞ فَصۡلٞ ١٣

14. ಇದು ಹಾಸ್ಯದ ಮಾತುಗಳಲ್ಲ. — وَمَا هُوَ بِٱلۡهَزۡلِ ١٤

15. ನಿಶ್ಚಯವಾಗಿಯೂ ಅವರು ತಂತ್ರಗಾರಿಕೆ ಮಾಡುತ್ತಿದ್ದಾರೆ. — إِنَّهُمۡ يَكِيدُونَ كَيۡدٗا ١٥

16. ನಾನು ಕೂಡ ತಂತ್ರಗಾರಿಕೆ ಮಾಡುತ್ತಿದ್ದೇನೆ. — وَأَكِيدُ كَيۡدٗا ١٦

17. ಸತ್ಯನಿಷೇಧಿಗಳಿಗೆ ಕಾಲಾವಕಾಶ ನೀಡಿರಿ. ಅವರನ್ನು ಸ್ವಲ್ಪ ಹೊತ್ತು ಹಾಗೆಯೇ ಬಿಟ್ಟುಬಿಡಿ. — فَمَهِّلِ ٱلۡكَٰفِرِينَ أَمۡهِلۡهُمۡ رُوَيۡدَۢا ١٧

## 87. ಅಲ್-ಅಅ್‌ಲಾ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ — بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಅತ್ಯುನ್ನತನಾದ ನಿಮ್ಮ ಪರಿಪಾಲಕನ (ಅಲ್ಲಾಹನ) ಹೆಸರಿನ ಪರಿಶುದ್ಧಿಯನ್ನು ಕೊಂಡಾಡಿರಿ. — سَبِّحِ ٱسۡمَ رَبِّكَ ٱلۡأَعۡلَى ١

2. ಅವನು ಯಾರೆಂದರೆ ಸೃಷ್ಟಿಸಿದವನು ಮತ್ತು ಸರಿಪಡಿಸಿದವನು, — ٱلَّذِي خَلَقَ فَسَوَّىٰ ٢

3. (ಸರಿಯಾಗಿ) ನಿರ್ಣಯಿಸಿದವನು ಮತ್ತು ಮಾರ್ಗದರ್ಶನ ಮಾಡಿದವನು, — وَٱلَّذِي قَدَّرَ فَهَدَىٰ ٣

4. ಹಸಿರು ಹಲ್ಲುಗಾವಲನ್ನು ಉಂಟು ಮಾಡಿದವನು, — وَٱلَّذِيٓ أَخۡرَجَ ٱلۡمَرۡعَىٰ ٤

5. ನಂತರ ಅವನು ಅದನ್ನು (ಒಣಗುವಂತೆ ಮಾಡಿ) ಕಪ್ಪು ಕಸಕಡ್ಡಿಗಳಾಗಿ ಪರಿವರ್ತಿಸಿದನು. — فَجَعَلَهُۥ غُثَآءً أَحۡوَىٰ ٥

6. ನಾವು ನಿಮಗೆ ಓದಿಕೊಡುವೆವು. ನಂತರ ನೀವು ಮರೆಯಲಾರಿರಿ. — سَنُقۡرِئُكَ فَلَا تَنسَىٰٓ ٦

[1] ಅಂದರೆ ಪುನರುತ್ಥಾನ ದಿನ.

| | | |
|---|---|---|
| 7. | ಅಲ್ಲಾಹು ಇಚ್ಛಿಸುವುದರ ಹೊರತಾಗಿ. ಅವನು ಬಹಿರಂಗವಾಗಿ-ರುವುದನ್ನು ಮತ್ತು ರಹಸ್ಯವಾಗಿರುವುದನ್ನು ತಿಳಿಯುತ್ತಾನೆ. | إِلَّا مَا شَآءَ ٱللَّهُۚ إِنَّهُۥ يَعۡلَمُ ٱلۡجَهۡرَ وَمَا يَخۡفَىٰ ۝٧ |
| 8. | ನಾವು ನಿಮಗೆ ಸುಲಭ ಮಾಡಿಕೊಡುವೆವು. | وَنُيَسِّرُكَ لِلۡيُسۡرَىٰ ۝٨ |
| 9. | ಆದ್ದರಿಂದ ನೀವು ಉಪದೇಶ ನೀಡಿರಿ. ಉಪದೇಶವು ಪ್ರಯೋಜನ ನೀಡುವುದಾದರೆ. | فَذَكِّرۡ إِن نَّفَعَتِ ٱلذِّكۡرَىٰ ۝٩ |
| 10. | ಭಯಪಡುವವನು ಉಪದೇಶವನ್ನು ಸ್ವೀಕರಿಸುವನು. | سَيَذَّكَّرُ مَن يَخۡشَىٰ ۝١٠ |
| 11. | ನತದೃಷ್ಟನು ಆ ಉಪದೇಶದಿಂದ ದೂರ ಸರಿಯುವನು. | وَيَتَجَنَّبُهَا ٱلۡأَشۡقَى ۝١١ |
| 12. | ಅವನು ಯಾರೆಂದರೆ ಅತಿದೊಡ್ಡ ಅಗ್ನಿಯನ್ನು ಪ್ರವೇಶಿಸುವವನು. | ٱلَّذِي يَصۡلَى ٱلنَّارَ ٱلۡكُبۡرَىٰ ۝١٢ |
| 13. | ನಂತರ ಅವನು ಅಲ್ಲಿ ಸಾಯುವುದಿಲ್ಲ, ಬದುಕುವುದೂ ಇಲ್ಲ. | ثُمَّ لَا يَمُوتُ فِيهَا وَلَا يَحۡيَىٰ ۝١٣ |
| 14. | ನಿಶ್ಚಯವಾಗಿಯೂ ಪರಿಶುದ್ಧತೆ ಪಡೆದವನು ಯಶಸ್ವಿಯಾದನು. | قَدۡ أَفۡلَحَ مَن تَزَكَّىٰ ۝١٤ |
| 15. | ತನ್ನ ಪರಿಪಾಲಕನ (ಅಲ್ಲಾಹನ) ಹೆಸರನ್ನು ಸ್ಮರಿಸಿದವನು ಮತ್ತು ನಮಾಝ್ ಮಾಡಿದವನು. | وَذَكَرَ ٱسۡمَ رَبِّهِۦ فَصَلَّىٰ ۝١٥ |
| 16. | ಆದರೆ ನೀವು ಇಹಲೋಕ ಜೀವನಕ್ಕೆ ಪ್ರಾಶಸ್ತ್ಯ ನೀಡುತ್ತೀರಿ. | بَلۡ تُؤۡثِرُونَ ٱلۡحَيَوٰةَ ٱلدُّنۡيَا ۝١٦ |
| 17. | ಪರಲೋಕವು ಅತಿಶ್ರೇಷ್ಠ ಮತ್ತು ಶಾಶ್ವತವಾಗಿದೆ. | وَٱلۡأٓخِرَةُ خَيۡرٞ وَأَبۡقَىٰٓ ۝١٧ |
| 18. | ಈ ಮಾತುಗಳು ಹಿಂದಿನ ಗ್ರಂಥಗಳಲ್ಲಿವೆ. | إِنَّ هَٰذَا لَفِي ٱلصُّحُفِ ٱلۡأُولَىٰ ۝١٨ |
| 19. | ಇಬ್ರಾಹೀಮ್ ಮತ್ತು ಮೂಸಾರ ಗ್ರಂಥಗಳಲ್ಲಿ. | صُحُفِ إِبۡرَٰهِيمَ وَمُوسَىٰ ۝١٩ |

# 88. ಅಲ್-ಗಾಶಿಯ

| | |
|---|---|
| ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |

| | | |
|---|---|---|
| 1. | ಆ ಮುಚ್ಚುವ ಘಟನೆಯ (ಪುನರುತ್ಥಾನ ದಿನದ) ಸಮಾಚಾರವು ನಿಮಗೆ ತಲುಪಿದೆಯೇ? | هَلۡ أَتَىٰكَ حَدِيثُ ٱلۡغَٰشِيَةِ ۝١ |
| 2. | ಅಂದು ಬಹಳಷ್ಟು ಮುಖಗಳು ದೀನವಾಗಿರುವುವು. | وُجُوهٞ يَوۡمَئِذٍ خَٰشِعَةٌ ۝٢ |
| 3. | ಅವರು ಪರಿಶ್ರಮಪಟ್ಟಿರುವರು ಮತ್ತು ಸುಸ್ತಾಗಿರುವರು. | عَامِلَةٞ نَّاصِبَةٞ ۝٣ |
| 4. | ಅವರು ತೀವ್ರ ಶಾಖದ ಬೆಂಕಿಯನ್ನು ಪ್ರವೇಶ ಮಾಡುವರು. | تَصۡلَىٰ نَارًا حَامِيَةٗ ۝٤ |
| 5. | ಕೊತಕೊತ ಕುದಿಯುವ ಒರತೆಯ ನೀರನ್ನು ಅವರಿಗೆ ಕುಡಿಸಲಾಗುವುದು. | تُسۡقَىٰ مِنۡ عَيۡنٍ ءَانِيَةٖ ۝٥ |

| | | |
|---|---|---|
| 6. | ಅವರಿಗೆ ಮುಳ್ಳಿನ ಮರದಿಂದಲೇ ಹೊರತು ಬೇರೆ ಯಾವುದೇ ಆಹಾರವಿಲ್ಲ. | لَّيۡسَ لَهُمۡ طَعَامٌ إِلَّا مِن ضَرِيعٖ ٦ |
| 7. | ಅದು ಪೋಷಣೆ ನೀಡುವುದಿಲ್ಲ. ಹಸಿವೆಯನ್ನು ನೀಗಿಸುವುದಿಲ್ಲ. | لَّا يُسۡمِنُ وَلَا يُغۡنِي مِن جُوعٖ ٧ |
| 8. | ಅಂದು ಬಹಳಷ್ಟು ಮುಖಗಳು ಶುಭ್ರ ತಾಜಾತನದಿಂದ ಹೊಳೆಯುತ್ತಿರುವುವು. | وُجُوهٞ يَوۡمَئِذٖ نَّاعِمَةٞ ٨ |
| 9. | ಅವರು ತಮ್ಮ ಪರಿಶ್ರಮದ ಬಗ್ಗೆ ಸಂತೃಪ್ತರಾಗಿರುವರು. | لِّسَعۡيِهَا رَاضِيَةٞ ٩ |
| 10. | ಅವರು ಉನ್ನತ ಸ್ವರ್ಗಗಳಲ್ಲಿರುವರು. | فِي جَنَّةٍ عَالِيَةٖ ١٠ |
| 11. | ಅವರು ಅಲ್ಲಿ ಅನಗತ್ಯ ಮಾತುಗಳನ್ನು ಕೇಳುವುದಿಲ್ಲ. | لَّا تَسۡمَعُ فِيهَا لَٰغِيَةٗ ١١ |
| 12. | ಅದರಲ್ಲಿ ಹರಿಯುವ ತೊರೆಯಿದೆ. | فِيهَا عَيۡنٞ جَارِيَةٞ ١٢ |
| 13. | ಅಲ್ಲಿ ಎತ್ತರದ ಮಂಚಗಳಿವೆ. | فِيهَا سُرُرٞ مَّرۡفُوعَةٞ ١٣ |
| 14. | ಜೋಡಿಸಿಡಲಾದ ಲೋಟಗಳಿವೆ. | وَأَكۡوَابٞ مَّوۡضُوعَةٞ ١٤ |
| 15. | ಸಾಲಾಗಿಡಲಾದ ದಿಂಬುಗಳಿವೆ. | وَنَمَارِقُ مَصۡفُوفَةٞ ١٥ |
| 16. | ಹರಡಿಕೊಂಡಿರುವ ಜಮುಖಾನೆಗಳಿವೆ. | وَزَرَابِيُّ مَبۡثُوثَةٌ ١٦ |
| 17. | ಅವರು ಒಂಟೆಯನ್ನು ನೋಡುವುದಿಲ್ಲವೇ—ಅದನ್ನು ಹೇಗೆ ಸೃಷ್ಟಿಸಲಾಗಿದೆಯೆಂದು? | أَفَلَا يَنظُرُونَ إِلَى ٱلۡإِبِلِ كَيۡفَ خُلِقَتۡ ١٧ |
| 18. | ಆಕಾಶವನ್ನು—ಅದನ್ನು ಹೇಗೆ ಎತ್ತರಿಸಲಾಗಿದೆಯೆಂದು? | وَإِلَى ٱلسَّمَآءِ كَيۡفَ رُفِعَتۡ ١٨ |
| 19. | ಪರ್ವತಗಳನ್ನು—ಅವುಗಳನ್ನು ಹೇಗೆ ದೃಢವಾಗಿ ನಿಲ್ಲಿಸಲಾಗಿದೆಯೆಂದು? | وَإِلَى ٱلۡجِبَالِ كَيۡفَ نُصِبَتۡ ١٩ |
| 20. | ಭೂಮಿಯನ್ನು—ಅದನ್ನು ಹೇಗೆ ಹರಡಲಾಗಿದೆಯೆಂದು? | وَإِلَى ٱلۡأَرۡضِ كَيۡفَ سُطِحَتۡ ٢٠ |
| 21. | (ಪ್ರವಾದಿಯವರೇ) ನೀವು ಉಪದೇಶ ನೀಡಿರಿ. ನೀವೊಬ್ಬ ಉಪದೇಶಕರು ಮಾತ್ರ. | فَذَكِّرۡ إِنَّمَآ أَنتَ مُذَكِّرٞ ٢١ |
| 22. | ನೀವು ಅವರ ಮೇಲೆ ಅಧಿಕಾರವಿರುವವರಲ್ಲ. | لَّسۡتَ عَلَيۡهِم بِمُصَيۡطِرٍ ٢٢ |
| 23. | ಆದರೆ ವಿಮುಖನಾಗುವವನು ಮತ್ತು ನಿಷೇಧಿಸುವವನು ಯಾರೋ, | إِلَّا مَن تَوَلَّىٰ وَكَفَرَ ٢٣ |
| 24. | ಅವನಿಗೆ ಅಲ್ಲಾಹು ಅತಿದೊಡ್ಡ ಶಿಕ್ಷೆಯನ್ನು ನೀಡುವನು. | فَيُعَذِّبُهُ ٱللَّهُ ٱلۡعَذَابَ ٱلۡأَكۡبَرَ ٢٤ |
| 25. | ನಿಶ್ಚಯವಾಗಿಯೂ ಅವರು ಮರಳಿ ಬರುವುದು ನಮ್ಮ ಬಳಿಗೇ ಆಗಿದೆ. | إِنَّ إِلَيۡنَآ إِيَابَهُمۡ ٢٥ |
| 26. | ನಂತರ ಅವರನ್ನು ವಿಚಾರಣೆ ಮಾಡುವುದು ನಮ್ಮ ಹೊಣೆಯಾಗಿದೆ. | ثُمَّ إِنَّ عَلَيۡنَا حِسَابَهُم ٢٦ |

# 89. ಅಲ್-ಫಜ್ರ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسْمِ ٱللَّهِ ٱلرَّحْمَٰنِ ٱلرَّحِيمِ

1. ಪ್ರಭಾತದ ಮೇಲಾಣೆ! | وَٱلْفَجْرِ ١
2. ಹತ್ತು ರಾತ್ರಿಗಳ ಮೇಲಾಣೆ![1] | وَلَيَالٍ عَشْرٍ ٢
3. ಸಮ ಮತ್ತು ಬೆಸಗಳ ಮೇಲಾಣೆ! | وَٱلشَّفْعِ وَٱلْوَتْرِ ٣
4. ರಾತ್ರಿಯ ಮೇಲಾಣೆ! ಅದು ಚಲಿಸತೊಡಗುವಾಗ. | وَٱلَّيْلِ إِذَا يَسْرِ ٤
5. ಇವುಗಳಲ್ಲಿ ಬುದ್ಧಿಯಿರುವವನ ಮಟ್ಟಿಗೆ ಪರ್ಯಾಪ್ತ ಆಣೆಯಿದೆಯೇ? | هَلْ فِى ذَٰلِكَ قَسَمٌ لِّذِى حِجْرٍ ٥
6. ನಿಮ್ಮ ಪರಿಪಾಲಕನು (ಅಲ್ಲಾಹು) ಆದ್ ಗೋತ್ರದವರೊಂದಿಗೆ ಏನು ಮಾಡಿದನೆಂದು ನೀವು ನೋಡಿಲ್ಲವೇ? | أَلَمْ تَرَ كَيْفَ فَعَلَ رَبُّكَ بِعَادٍ ٦
7. ಸ್ತಂಭಗಳ ಜನರಾದ ಇರಮ್ ಗೋತ್ರದವರೊಂದಿಗೆ.[2] | إِرَمَ ذَاتِ ٱلْعِمَادِ ٧
8. ಅವರಂತಿರುವ ಜನರನ್ನು ಯಾವುದೇ ಊರಲ್ಲೂ ಸೃಷ್ಟಿಸಲಾಗಿಲ್ಲ. | ٱلَّتِى لَمْ يُخْلَقْ مِثْلُهَا فِى ٱلْبِلَٰدِ ٨
9. ಕಣಿವೆಯಲ್ಲಿ ಬಂಡೆಗಳನ್ನು ಕೊರೆಯುತ್ತಿದ್ದ ಸಮೂದ್ ಗೋತ್ರದವರೊಂದಿಗೆ. | وَثَمُودَ ٱلَّذِينَ جَابُوا۟ ٱلصَّخْرَ بِٱلْوَادِ ٩
10. ಗೂಟಗಳ ಒಡೆಯನಾದ ಫರೋಹನೊಂದಿಗೆ.[3] | وَفِرْعَوْنَ ذِى ٱلْأَوْتَادِ ١٠
11. ಅವರೆಲ್ಲರೂ ಊರುಗಳಲ್ಲಿ ಅತಿರೇಕವೆಸಗುತ್ತಿದ್ದರು. | ٱلَّذِينَ طَغَوْا۟ فِى ٱلْبِلَٰدِ ١١
12. ಕಿಡಿಗೇಡಿತನವನ್ನು ಅತಿಯಾಗಿ ಹಬ್ಬಿಸಿದ್ದರು. | فَأَكْثَرُوا۟ فِيهَا ٱلْفَسَادَ ١٢
13. ಕೊನೆಗೆ ನಿಮ್ಮ ಪರಿಪಾಲಕನು (ಅಲ್ಲಾಹು) ಅವರೆಲ್ಲರ ಮೇಲೆ ಶಿಕ್ಷೆಯ ಕೊರಡನ್ನು ಸುರಿಸಿದನು. | فَصَبَّ عَلَيْهِمْ رَبُّكَ سَوْطَ عَذَابٍ ١٣
14. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನು (ಅಲ್ಲಾಹು) ನಿಗಾವಣೆಯಲ್ಲಿದ್ದಾನೆ.[4] | إِنَّ رَبَّكَ لَبِٱلْمِرْصَادِ ١٤
15. ಮನುಷ್ಯನ ಸ್ಥಿತಿ ಹೇಗಿದೆಯೆಂದರೆ, ಅವನ ಪರಿಪಾಲಕನು | فَأَمَّا ٱلْإِنسَٰنُ إِذَا مَا ٱبْتَلَىٰهُ رَبُّهُۥ فَأَكْرَمَهُۥ

[1] ದುಲ್-ಹಿಜ್ಜ ತಿಂಗಳ ಮೊದಲ ಹತ್ತು ದಿನ-ರಾತ್ರಿಗಳು.

[2] ಇರಮ್ ಎಂದರೆ ಆದ್ ಗೋತ್ರದವರ ಪೂರ್ವ ಪಿತಾಮಹನ ಹೆಸರು. ಈತನ ಸಂತಾನ ಪರಂಪರೆಯೇ ಆದ್ ಗೋತ್ರ. ಸ್ತಂಭಗಳ ಜನರು ಎಂಬ ನುಡಿಗಟ್ಟು ಅವರ ಶಕ್ತಿ ಮತ್ತು ದೇಹದಾರ್ಢ್ಯವನ್ನು ಸೂಚಿಸುತ್ತದೆ.

[3] ಗೂಟಗಳ ಒಡೆಯ ಎಂದರೆ ಮಹಾ ಸೈನ್ಯವನ್ನು ಹೊಂದಿರುವವನು ಎಂದರ್ಥ. ಈತ ಜನರನ್ನು ಮೊಳೆ ಬಡಿದು ಶಿಕ್ಷಿಸುತ್ತಿದ್ದ ಎಂಬ ಅರ್ಥದಲ್ಲೂ ಈತನನ್ನು ಗೂಟಗಳ (ಮೊಳೆಗಳ) ಒಡೆಯ ಎಂದು ಕರೆಯಲಾಗಿರಬಹುದು.

[4] ಅಂದರೆ ಅವನು ಎಲ್ಲವನ್ನೂ ಗಮನಿಸುತ್ತಿದ್ದಾನೆ. ಎಲ್ಲವೂ ಅವನ ನಿಗಾದಲ್ಲಿದೆ.

(ಅಲ್ಲಾಹು) ಅವನನ್ನು ಪರೀಕ್ಷಿಸಿ ಅವನಿಗೆ ಗೌರವ ಮತ್ತು ಅನುಗ್ರಹವನ್ನು ದಯಪಾಲಿಸಿದರೆ, ಅವನು ಹೇಳುತ್ತಾನೆ: “ನನ್ನ ಪರಿಪಾಲಕ (ಅಲ್ಲಾಹು) ನನ್ನನ್ನು ಗಣ್ಯ ವ್ಯಕ್ತಿಯಾಗಿ ಮಾಡಿದ್ದಾನೆ.”

وَنَعَّمَهُۥ فَيَقُولُ رَبِّيٓ أَكۡرَمَنِ ١٥

16. ಆದರೆ ಅವನು ಮನುಷ್ಯನನ್ನು ಪರೀಕ್ಷಿಸಿ ಅವನ ಉಪಜೀವನವನ್ನು ಇಕ್ಕಟ್ಟಿಗೊಳಿಸಿದರೆ, ಅವನು ಹೇಳುತ್ತಾನೆ: “ನನ್ನ ಪರಿಪಾಲಕ (ಅಲ್ಲಾಹು) ನನ್ನನ್ನು ನಿಂದನಾರ್ಹನಾಗಿ ಮಾಡಿದ್ದಾನೆ.”

وَأَمَّآ إِذَا مَا ٱبۡتَلَىٰهُ فَقَدَرَ عَلَيۡهِ رِزۡقَهُۥ فَيَقُولُ رَبِّيٓ أَهَٰنَنِ ١٦

17. ಇಲ್ಲವೇ ಇಲ್ಲ, ವಾಸ್ತವವಾಗಿ ನೀವು ಅನಾಥರಿಗೆ ಗೌರವ ನೀಡುವುದಿಲ್ಲ.

كَلَّاۖ بَل لَّا تُكۡرِمُونَ ٱلۡيَتِيمَ ١٧

18. ಬಡವರಿಗೆ ಅನ್ನ ನೀಡಲು ಪರಸ್ಪರ ಉತ್ತೇಜಿಸುವುದಿಲ್ಲ.

وَلَا تَحَٰٓضُّونَ عَلَىٰ طَعَامِ ٱلۡمِسۡكِينِ ١٨

19. ನೀವು ಉತ್ತರಾಧಿಕಾರದ ಆಸ್ತಿಯನ್ನು ಬಾಚಿ ಬಾಚಿ ತಿನ್ನುತ್ತೀರಿ.

وَتَأۡكُلُونَ ٱلتُّرَاثَ أَكۡلٗا لَّمّٗا ١٩

20. ನೀವು ಧನವನ್ನು ಅತಿಯಾಗಿ ಪ್ರೀತಿಸುತ್ತೀರಿ.

وَتُحِبُّونَ ٱلۡمَالَ حُبّٗا جَمّٗا ٢٠

21. ಅಲ್ಲ (ನಿಮ್ಮ ಸ್ಥಿತಿ ಹಾಗಾಗಬಾರದು). ಭೂಮಿಯನ್ನು ಸಂಪೂರ್ಣ ಪುಡಿ ಮಾಡಿ ಸಮತಟ್ಟುಗೊಳಿಸುವಾಗ.

كَلَّآۖ إِذَا دُكَّتِ ٱلۡأَرۡضُ دَكّٗا دَكّٗا ٢١

22. ನಿಮ್ಮ ಪರಿಪಾಲಕನು (ಅಲ್ಲಾಹು) ಬರುವಾಗ ಮತ್ತು ಸಾಲುಸಾಲಾಗಿ ದೇವದೂತರುಗಳು ಬರುವಾಗ.

وَجَآءَ رَبُّكَ وَٱلۡمَلَكُ صَفّٗا صَفّٗا ٢٢

23. ಆ ದಿನ ನರಕವನ್ನು ತರಲಾಗುವುದು. ಅಂದು ಮನುಷ್ಯನಿಗೆ ಮನವರಿಕೆಯಾಗುವುದು. ಆದರೆ ಆಗ ಮನವರಿಕೆಯಾಗುವು-ದರಿಂದ ಏನು ಪ್ರಯೋಜನ?

وَجِاْيٓءَ يَوۡمَئِذِۭ بِجَهَنَّمَۚ يَوۡمَئِذٖ يَتَذَكَّرُ ٱلۡإِنسَٰنُ وَأَنَّىٰ لَهُ ٱلذِّكۡرَىٰ ٢٣

24. ಅವನು ಹೇಳುವನು: “ಅಯ್ಯೋ! ನಾನು ನನ್ನ ಈ ಜೀವನಕ್ಕಾಗಿ ಏನಾದರೂ ಸಿದ್ಧತೆಗಳನ್ನು ಮಾಡಿರುತ್ತಿದ್ದರೆ ಎಷ್ಟು ಚೆನ್ನಾಗಿತ್ತು!”

يَقُولُ يَٰلَيۡتَنِي قَدَّمۡتُ لِحَيَاتِي ٢٤

25. ಅಂದು ಅಲ್ಲಾಹು ನೀಡುವಂತಹ (ಕಠೋರ) ಶಿಕ್ಷೆಯನ್ನು ನೀಡಲು ಯಾರಿಗೂ ಸಾಧ್ಯವಿಲ್ಲ.

فَيَوۡمَئِذٖ لَّا يُعَذِّبُ عَذَابَهُۥٓ أَحَدٞ ٢٥

26. ಅವನು ಹಿಡಿದು ಬಂಧಿಸುವಂತೆ ಹಿಡಿದು ಬಂಧಿಸಲು ಯಾರಿಗೂ ಸಾಧ್ಯವಿಲ್ಲ.

وَلَا يُوثِقُ وَثَاقَهُۥٓ أَحَدٞ ٢٦

27. ಓ ಸಮಾಧಾನದಲ್ಲಿರುವ ಆತ್ಮವೇ!

يَٰٓأَيَّتُهَا ٱلنَّفۡسُ ٱلۡمُطۡمَئِنَّةُ ٢٧

28. ನಿನ್ನ ಪರಿಪಾಲಕನ (ಅಲ್ಲಾಹನ) ಬಳಿಗೆ ಮರಳು—ನೀನು ಅವನ ಬಗ್ಗೆ ಸಂಪ್ರೀತನಾಗಿರುವ ಮತ್ತು ಅವನು ನಿನ್ನ ಬಗ್ಗೆ ಸಂಪ್ರೀತನಾಗಿರುವ ಸ್ಥಿತಿಯಲ್ಲಿ.

ٱرۡجِعِيٓ إِلَىٰ رَبِّكِ رَاضِيَةٗ مَّرۡضِيَّةٗ ٢٨

29. ನನ್ನ ವಿಶೇಷ ದಾಸರೊಡನೆ ಸೇರಿಕೋ. فَٱدۡخُلِي فِي عِبَٰدِي ﴿٢٩﴾

30. ನನ್ನ ಸ್ವರ್ಗಕ್ಕೆ ಪ್ರವೇಶಿಸು. وَٱدۡخُلِي جَنَّتِي ﴿٣٠﴾

# 90. ಅಲ್-ಬಲದ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ بِسۡمِ ٱللَّهِ ٱلرَّحۡمَٰنِ ٱلرَّحِيمِ

1. ನಾನು ಈ ನಗರದ (ಮಕ್ಕಾದ) ಮೇಲೆ ಆಣೆ ಮಾಡುತ್ತೇನೆ. لَآ أُقۡسِمُ بِهَٰذَا ٱلۡبَلَدِ ﴿١﴾

2. ನೀವು ಈ ನಗರದ ವಾಸಿಯಾಗಿರುವಿರಿ. وَأَنتَ حِلُّۢ بِهَٰذَا ٱلۡبَلَدِ ﴿٢﴾

3. ತಂದೆ ಮತ್ತು ಮಕ್ಕಳ ಮೇಲಾಣೆ! وَوَالِدٖ وَمَا وَلَدَ ﴿٣﴾

4. ನಿಶ್ಚಯವಾಗಿಯೂ ನಾವು ಮನುಷ್ಯನನ್ನು ಬಹಳ ಕಷ್ಟಪಡುವಂತೆ ಸೃಷ್ಟಿಸಿದ್ದೇವೆ. لَقَدۡ خَلَقۡنَا ٱلۡإِنسَٰنَ فِي كَبَدٍ ﴿٤﴾

5. ಅವನು ಯಾರ ನಿಯಂತ್ರಣದಲ್ಲೂ ಇಲ್ಲವೆಂದು ಅವನು ಭಾವಿಸುತ್ತಾನೆಯೇ? أَيَحۡسَبُ أَن لَّن يَقۡدِرَ عَلَيۡهِ أَحَدٞ ﴿٥﴾

6. ಅವನು ಹೇಳುತ್ತಾನೆ: “ನಾನು ಹೇರಳ ಸಂಪತ್ತು ಖರ್ಚು ಮಾಡಿದ್ದೇನೆ.” يَقُولُ أَهۡلَكۡتُ مَالٗا لُّبَدًا ﴿٦﴾

7. ಅವನನ್ನು ಯಾರೂ ನೋಡುವುದಿಲ್ಲವೆಂದು ಅವನು ಭಾವಿಸುತ್ತಾನೆಯೇ? أَيَحۡسَبُ أَن لَّمۡ يَرَهُۥٓ أَحَدٌ ﴿٧﴾

8. ಅವನಿಗೆ ನಾವು ಎರಡು ಕಣ್ಣುಗಳನ್ನು ಕೊಡಲಿಲ್ಲವೇ? أَلَمۡ نَجۡعَل لَّهُۥ عَيۡنَيۡنِ ﴿٨﴾

9. ಒಂದು ನಾಲಗೆ ಮತ್ತು ಎರಡು ತುಟಿಗಳನ್ನು? وَلِسَانٗا وَشَفَتَيۡنِ ﴿٩﴾

10. ನಾವು ಅವನಿಗೆ ಎರಡು ಸ್ಪಷ್ಟ ಮಾರ್ಗಗಳನ್ನು ತೋರಿಸಿಕೊಟ್ಟೆವು. وَهَدَيۡنَٰهُ ٱلنَّجۡدَيۡنِ ﴿١٠﴾

11. ಆದರೆ ಅವನು ಆ ಘಾಟಿಯಲ್ಲಿ ಪ್ರವೇಶ ಮಾಡಿಲ್ಲ. فَلَا ٱقۡتَحَمَ ٱلۡعَقَبَةَ ﴿١١﴾

12. ಆ ಘಾಟಿ ಏನೆಂದು ನಿಮಗೇನು ಗೊತ್ತು? وَمَآ أَدۡرَىٰكَ مَا ٱلۡعَقَبَةُ ﴿١٢﴾

13. ಅದು ಗುಲಾಮನನ್ನು ಸ್ವತಂತ್ರಗೊಳಿಸುವುದು, فَكُّ رَقَبَةٍ ﴿١٣﴾

14. ಅಥವಾ ಹಸಿವಿನ ದಿನದಲ್ಲಿ ಅನ್ನ ನೀಡುವುದು. أَوۡ إِطۡعَٰمٞ فِي يَوۡمٖ ذِي مَسۡغَبَةٖ ﴿١٤﴾

15. ಸಂಬಂಧಿಕನಾದ ಅನಾಥನಿಗೆ, يَتِيمٗا ذَا مَقۡرَبَةٍ ﴿١٥﴾

16. ಅಥವಾ ಬಡತನದಲ್ಲಿರುವ ದರಿದ್ರನಿಗೆ. أَوۡ مِسۡكِينٗا ذَا مَتۡرَبَةٖ ﴿١٦﴾

17. ನಂತರ ಸತ್ಯವಿಶ್ವಾಸಿಗಳಲ್ಲಿ ಮತ್ತು ತಾಳ್ಮೆಯ ಉಪದೇಶ ثُمَّ كَانَ مِنَ ٱلَّذِينَ ءَامَنُواْ وَتَوَاصَوۡاْ بِٱلصَّبۡرِ

| | | |
|---|---|---|
| | ನೀಡುವವರು ಹಾಗೂ ದಯೆಯ ಉಪದೇಶ ನೀಡುವವರಲ್ಲಿ ಸೇರುವುದು. | وَتَوَاصَوۡاْ بِٱلۡمَرۡحَمَةِ ۝١٧ |
| 18. | ಅವರೇ ಬಲಭಾಗದ ಜನರು. | أُوْلَٰٓئِكَ أَصۡحَٰبُ ٱلۡمَيۡمَنَةِ ۝١٨ |
| 19. | ನಮ್ಮ ವಚನಗಳನ್ನು ನಿಷೇಧಿಸಿದವರು ಯಾರೋ ಅವರೇ ಎಡಭಾಗದ ಜನರು. | وَٱلَّذِينَ كَفَرُواْ بِـَٔايَٰتِنَا هُمۡ أَصۡحَٰبُ ٱلۡمَشۡـَٔمَةِ ۝١٩ |
| 20. | ಬೆಂಕಿಯು ಎಲ್ಲಾ ಕಡೆಗಳಿಂದಲೂ ಅವರನ್ನು ಮುಚ್ಚಿಕೊಳ್ಳುವುದು. | عَلَيۡهِمۡ نَارٞ مُّؤۡصَدَةُۢ ۝٢٠ |

# 91. ಅಶ್ಶಮ್ಸ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ಸೂರ್ಯ ಮತ್ತು ಅದರ ಬೆಳಕಿನ ಮೇಲಾಣೆ! | وَٱلشَّمۡسِ وَضُحَىٰهَا ۝١ |
| 2. | ಚಂದ್ರನ ಮೇಲಾಣೆ! ಅದು ಸೂರ್ಯನನ್ನು ಹಿಂಬಾಲಿಸುವಾಗ. | وَٱلۡقَمَرِ إِذَا تَلَىٰهَا ۝٢ |
| 3. | ಹಗಲಿನ ಮೇಲಾಣೆ! ಅದು ಸೂರ್ಯನನ್ನು ಬೆಳಗಿಸುವಾಗ. | وَٱلنَّهَارِ إِذَا جَلَّىٰهَا ۝٣ |
| 4. | ರಾತ್ರಿಯ ಮೇಲಾಣೆ! ಅದು ಸೂರ್ಯನನ್ನು ಮುಚ್ಚುವಾಗ. | وَٱلَّيۡلِ إِذَا يَغۡشَىٰهَا ۝٤ |
| 5. | ಆಕಾಶ ಮತ್ತು ಅದನ್ನು ನಿರ್ಮಿಸಿದವನ ಮೇಲಾಣೆ! | وَٱلسَّمَآءِ وَمَا بَنَىٰهَا ۝٥ |
| 6. | ಭೂಮಿ ಮತ್ತು ಅದನ್ನು ವಿಸ್ತರಿಸಿದವನ ಮೇಲಾಣೆ! | وَٱلۡأَرۡضِ وَمَا طَحَىٰهَا ۝٦ |
| 7. | ಆತ್ಮ ಮತ್ತು ಅದನ್ನು ಸರಿಪಡಿಸಿದವನ ಮೇಲಾಣೆ! | وَنَفۡسٖ وَمَا سَوَّىٰهَا ۝٧ |
| 8. | ನಂತರ ಅವನು ಅದಕ್ಕೆ ದುಷ್ಕರ್ಮದ ಬಗ್ಗೆ ಮತ್ತು ರಕ್ಷಾಮಾರ್ಗದ ಬಗ್ಗೆ ತಿಳಿಸಿದನು.[1] | فَأَلۡهَمَهَا فُجُورَهَا وَتَقۡوَىٰهَا ۝٨ |
| 9. | ಅದನ್ನು ಪರಿಶುದ್ಧಗೊಳಿಸಿದವನು ಯಶಸ್ವಿಯಾದನು. | قَدۡ أَفۡلَحَ مَن زَكَّىٰهَا ۝٩ |
| 10. | ಅದನ್ನು ಮಲಿನಗೊಳಿಸಿದವನು ವಿಫಲನಾದನು. | وَقَدۡ خَابَ مَن دَسَّىٰهَا ۝١٠ |
| 11. | ಸಮೂದ್ ಗೋತ್ರದವರು ತಮ್ಮ ಅತಿರೇಕದಿಂದಾಗಿ (ಸತ್ಯವನ್ನು) ನಿಷೇಧಿಸಿದರು. | كَذَّبَتۡ ثَمُودُ بِطَغۡوَىٰهَآ ۝١١ |
| 12. | ಅವರಲ್ಲಿನ ಅತ್ಯಂತ ನತದೃಷ್ಟನು ಎದ್ದು ನಿಂತ ಸಂದರ್ಭ. | إِذِ ٱنۢبَعَثَ أَشۡقَىٰهَا ۝١٢ |

[1] ಅಂದರೆ ಪ್ರವಾದಿಗಳನ್ನು ಕಳುಹಿಸುವ ಮೂಲಕ ಮತ್ತು ಗ್ರಂಥಗಳನ್ನು ಅವತೀರ್ಣಗೊಳಿಸುವ ಮೂಲಕ ಅಲ್ಲಾಹು ಮನುಷ್ಯನಿಗೆ ಒಳಿತು ಮತ್ತು ಕೆಡುಕುಗಳನ್ನು ತಿಳಿಸಿಕೊಟ್ಟಿದ್ದಾನೆ. ಅಥವಾ ಮನುಷ್ಯನ ಸಹಜ ಮನೋಧರ್ಮದಲ್ಲೇ ಒಳಿತನ್ನು ಸ್ವೀಕರಿಸುವ ಮತ್ತು ಕೆಡುಕಿನಿಂದ ದೂರವಾಗುವ ಇಚ್ಛಾಶಕ್ತಿಯನ್ನು ತುಂಬಲಾಗಿದೆ.

13. ಆಗ ಅಲ್ಲಾಹನ ಸಂದೇಶವಾಹಕರು (ಸ್ವಾಲಿಹ್) ಅವರೊಡನೆ ಹೇಳಿದರು: “ಅಲ್ಲಾಹನ ಒಂಟೆ ಮತ್ತು ಅದರ ಜಲಪಾನದ ಬಗ್ಗೆ (ಎಚ್ಚರವಹಿಸಿರಿ).”

فَقَالَ لَهُمۡ رَسُولُ ٱللَّهِ نَاقَةَ ٱللَّهِ وَسُقۡيَٰهَا ﴿١٣﴾

14. ಆದರೆ ಅವರು ಆ ಸಂದೇಶವಾಹಕರನ್ನು ನಿಷೇಧಿಸಿದರು ಮತ್ತು ಒಂಟೆಯ ಕಾಲುಗಳನ್ನು ಕಡಿದರು. ಆಗ ಅವರ ಪಾಪಗಳ ಕಾರಣದಿಂದ ಅವರ ಪರಿಪಾಲಕನು (ಅಲ್ಲಾಹು) ಅವರ ಮೇಲೆ ವಿನಾಶವನ್ನು ತಂದನು. ಅವನು ಅದನ್ನು (ಅವರೆಲ್ಲರಿಗೂ) ಸಮಾನಗೊಳಿಸಿದನು.

فَكَذَّبُوهُ فَعَقَرُوهَا فَدَمۡدَمَ عَلَيۡهِمۡ رَبُّهُم بِذَنۢبِهِمۡ فَسَوَّىٰهَا ﴿١٤﴾

15. ಅದರ ಅನಂತರ ಫಲದ ಬಗ್ಗೆ ಅವನು ಭಯಪಡುವುದಿಲ್ಲ.

وَلَا يَخَافُ عُقۡبَٰهَا ﴿١٥﴾

# 92. ಅಲ್ಲೈಲ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ

بِسۡمِ ٱللَّهِ ٱلرَّحۡمَٰنِ ٱلرَّحِيمِ

1. ರಾತ್ರಿಯ ಮೇಲಾಣೆ! ಅದು (ಕತ್ತಲೆಯಿಂದ) ಆವರಿಸುವಾಗ.

وَٱلَّيۡلِ إِذَا يَغۡشَىٰ ﴿١﴾

2. ಹಗಲಿನ ಮೇಲಾಣೆ! ಅದು ಬೆಳಕು ಬೀರುವಾಗ.

وَٱلنَّهَارِ إِذَا تَجَلَّىٰ ﴿٢﴾

3. ಗಂಡು ಮತ್ತು ಹೆಣ್ಣನ್ನು ಸೃಷ್ಟಿಸಿದವನ ಮೇಲಾಣೆ!

وَمَا خَلَقَ ٱلذَّكَرَ وَٱلۡأُنثَىٰٓ ﴿٣﴾

4. ನಿಶ್ಚಯವಾಗಿಯೂ ನಿಮ್ಮ ಪರಿಶ್ರಮಗಳು ವಿಭಿನ್ನವಾಗಿವೆ.

إِنَّ سَعۡيَكُمۡ لَشَتَّىٰ ﴿٤﴾

5. (ಅಲ್ಲಾಹನ ಮಾರ್ಗದಲ್ಲಿ) ನೀಡಿದವನು ಮತ್ತು (ಅಲ್ಲಾಹನನ್ನು) ಭಯಪಟ್ಟವನು ಯಾರೋ,

فَأَمَّا مَنۡ أَعۡطَىٰ وَٱتَّقَىٰ ﴿٥﴾

6. ಮತ್ತು ಒಳಿತಿನಲ್ಲಿ ನಂಬಿಕೆಯಿಡುವವನು ಯಾರೋ,

وَصَدَّقَ بِٱلۡحُسۡنَىٰ ﴿٦﴾

7. ನಾವು ಅವನಿಗೆ ಸುಲಭವಾದ ದಾರಿಯನ್ನು ಅನುಕೂಲ ಮಾಡಿಕೊಡುವೆವು.

فَسَنُيَسِّرُهُۥ لِلۡيُسۡرَىٰ ﴿٧﴾

8. ಆದರೆ ಜಿಪುಣತನ ತೋರಿದವನು ಮತ್ತು ತನ್ನನ್ನು ತಾನೇ ಸ್ವಯಂ-ಪರ್ಯಾಪ್ತನೆಂದು ಬಗೆದವನು ಯಾರೋ,

وَأَمَّا مَنۢ بَخِلَ وَٱسۡتَغۡنَىٰ ﴿٨﴾

9. ಮತ್ತು ಒಳಿತಿನಲ್ಲಿ ನಂಬಿಕೆಯಿಡದವನು ಯಾರೋ,

وَكَذَّبَ بِٱلۡحُسۡنَىٰ ﴿٩﴾

10. ನಾವು ಅವನಿಗೆ ಕಷ್ಟವಾದ ದಾರಿಯನ್ನು ಅನುಕೂಲ ಮಾಡಿಕೊಡುವೆವು.

فَسَنُيَسِّرُهُۥ لِلۡعُسۡرَىٰ ﴿١٠﴾

11. ಅವನು (ನರಕಕ್ಕೆ) ಬೀಳುವಾಗ ಅವನ ಸಂಪತ್ತು ಅವನ ಪ್ರಯೋಜನಕ್ಕೆ ಬರುವುದಿಲ್ಲ.

وَمَا يُغۡنِي عَنۡهُ مَالُهُۥٓ إِذَا تَرَدَّىٰٓ ﴿١١﴾

| | | |
|---|---|---|
| 12. | ನಿಶ್ಚಯವಾಗಿಯೂ ಸನ್ಮಾರ್ಗವನ್ನು ತೋರಿಸುವುದು ನಮ್ಮ ಹೊಣೆಯಾಗಿದೆ. | إِنَّ عَلَيۡنَا لَلۡهُدَىٰ ١٢ |
| 13. | ನಿಶ್ಚಯವಾಗಿಯೂ ಪರಲೋಕ ಮತ್ತು ಇಹಲೋಕಗಳು ನಮ್ಮ ವಶದಲ್ಲಿವೆ. | وَإِنَّ لَنَا لَلۡأٓخِرَةَ وَٱلۡأُولَىٰ ١٣ |
| 14. | ನಾನು ನಿಮಗೆ ಧಗಧಗಿಸುವ ಅಗ್ನಿಯ ಬಗ್ಗೆ ಎಚ್ಚರಿಕೆ ನೀಡಿದ್ದೇನೆ. | فَأَنذَرۡتُكُمۡ نَارٗا تَلَظَّىٰ ١٤ |
| 15. | ಅತ್ಯಂತ ನತದೃಷ್ಟನಲ್ಲದೆ ಇನ್ನಾರೂ ಅದನ್ನು ಪ್ರವೇಶಿಸುವುದಿಲ್ಲ. | لَا يَصۡلَىٰهَآ إِلَّا ٱلۡأَشۡقَى ١٥ |
| 16. | ಅವನು ಯಾರೆಂದರೆ ನಿಷೇಧಿಸಿದವನು ಮತ್ತು ಮುಖ ತಿರುಗಿಸಿ ನಡೆದವನು. | ٱلَّذِي كَذَّبَ وَتَوَلَّىٰ ١٦ |
| 17. | ಅತ್ಯಧಿಕ ದೇವಭಯವುಳ್ಳವನನ್ನು ಅದರಿಂದ ದೂರವಿರಿಸಲಾಗುವುದು. | وَسَيُجَنَّبُهَا ٱلۡأَتۡقَى ١٧ |
| 18. | ಅವನು ಯಾರೆಂದರೆ ಪರಿಶುದ್ಧತೆಯನ್ನು ಪಡೆಯುವುದಕ್ಕಾಗಿ ತನ್ನ ಸಂಪತ್ತನ್ನು ನೀಡುವವನು. | ٱلَّذِي يُؤۡتِي مَالَهُۥ يَتَزَكَّىٰ ١٨ |
| 19. | ಪ್ರತ್ಯುಪಕಾರವಾಗಿ ಅದನ್ನು ನೀಡಬೇಕಾದ ಯಾವುದೇ ಜರೂರತ್ತು ಅವನೊಡನೆ ಯಾರಿಗೂ ಇಲ್ಲ.[1] | وَمَا لِأَحَدٍ عِندَهُۥ مِن نِّعۡمَةٖ تُجۡزَىٰٓ ١٩ |
| 20. | ಅತ್ಯುನ್ನತನಾದ ತನ್ನ ಪರಿಪಾಲಕನ (ಅಲ್ಲಾಹನ) ಸಂಪ್ರೀತಿಗಾಗಿ ಮಾತ್ರ (ಅವನು ಅದನ್ನು ನೀಡುತ್ತಾನೆ). | إِلَّا ٱبۡتِغَآءَ وَجۡهِ رَبِّهِ ٱلۡأَعۡلَىٰ ٢٠ |
| 21. | ಸದ್ಯವೇ ಅವನು ಸಂತೃಪ್ತನಾಗುವನು. | وَلَسَوۡفَ يَرۡضَىٰ ٢١ |

# 93. ಅದ್ದುಹಾ

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ಪೂರ್ವಾಹ್ನದ ಮೇಲಾಣೆ! | وَٱلضُّحَىٰ ١ |
| 2. | ರಾತ್ರಿಯ ಮೇಲಾಣೆ! ಅದು (ಕತ್ತಲೆಯಿಂದ) ಆವರಿಸುವಾಗ. | وَٱلَّيۡلِ إِذَا سَجَىٰ ٢ |
| 3. | (ಪ್ರವಾದಿಯವರೇ) ನಿಮ್ಮ ಪರಿಪಾಲಕನು (ಅಲ್ಲಾಹು) ನಿಮ್ಮನ್ನು ತೊರೆದಿಲ್ಲ ಮತ್ತು ನಿಮ್ಮ ಬಗ್ಗೆ ಬೇಸರಪಟ್ಟಿಲ್ಲ. | مَا وَدَّعَكَ رَبُّكَ وَمَا قَلَىٰ ٣ |
| 4. | ನಿಶ್ಚಯವಾಗಿಯೂ ನಿಮಗೆ ಇಹಲೋಕಕ್ಕಿಂತಲೂ ಪರಲೋಕವು ಶ್ರೇಷ್ಠವಾಗಿದೆ. | وَلَلۡأٓخِرَةُ خَيۡرٞ لَّكَ مِنَ ٱلۡأُولَىٰ ٤ |

[1] ಅಂದರೆ ತನಗೆ ಜನರಿಗೆ ಉಪಕಾರ ಸಿಗಬೇಕು ಎಂಬ ಉದ್ದೇಶದಿಂದ ಅವನು ದಾನ ಮಾಡುವುದಿಲ್ಲ.

| | | |
|---|---|---|
| 5. | ನಿಮ್ಮ ಪರಿಪಾಲಕನು (ಅಲ್ಲಾಹು) ಸದ್ಯವೇ ನಿಮಗೆ (ಅನುಗ್ರಹಗಳನ್ನು) ದಯಪಾಲಿಸುವನು. ಆಗ ನೀವು ಸಂತೃಪ್ತರಾಗುವಿರಿ. | وَلَسَوۡفَ يُعۡطِيكَ رَبُّكَ فَتَرۡضَىٰٓ ٥ |
| 6. | ಅವನು ನಿಮ್ಮನ್ನು ಅನಾಥನಾಗಿ ಕಂಡು ನಿಮಗೆ ಆಶ್ರಯ ನೀಡಲಿಲ್ಲವೇ? | أَلَمۡ يَجِدۡكَ يَتِيمٗا فَـَٔاوَىٰ ٦ |
| 7. | ಅವನು ನಿಮ್ಮನ್ನು ದಾರಿ ತಪ್ಪಿದವನಾಗಿ ಕಂಡು ನಿಮಗೆ ಮಾರ್ಗದರ್ಶನ ಮಾಡಿದನು. | وَوَجَدَكَ ضَآلّٗا فَهَدَىٰ ٧ |
| 8. | ಅವನು ನಿಮ್ಮನ್ನು ಬಡವನಾಗಿ ಕಂಡು ನಿಮಗೆ ಐಶ್ವರ್ಯವನ್ನು ನೀಡಿದನು. | وَوَجَدَكَ عَآئِلٗا فَأَغۡنَىٰ ٨ |
| 9. | ಆದ್ದರಿಂದ ನೀವು ಅನಾಥನೊಡನೆ ಕಠಿಣವಾಗಿ ವರ್ತಿಸಬೇಡಿ. | فَأَمَّا ٱلۡيَتِيمَ فَلَا تَقۡهَرۡ ٩ |
| 10. | ಬೇಡುವವನನ್ನು ಗದರಿಸಬೇಡಿ. | وَأَمَّا ٱلسَّآئِلَ فَلَا تَنۡهَرۡ ١٠ |
| 11. | ನಿಮ್ಮ ಪರಿಪಾಲಕನ (ಅಲ್ಲಾಹನ) ಅನುಗ್ರಹಗಳ ಬಗ್ಗೆ ಮಾತನಾಡುತ್ತಿರಿ. | وَأَمَّا بِنِعۡمَةِ رَبِّكَ فَحَدِّثۡ ١١ |

# 94. ಅಶ್ಶರ್ಹ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ — بِسۡمِ ٱللَّهِ ٱلرَّحۡمَٰنِ ٱلرَّحِيمِ

| | | |
|---|---|---|
| 1. | (ಪ್ರವಾದಿಯವರೇ) ನಾವು ನಿಮಗೆ ನಿಮ್ಮ ಹೃದಯವನ್ನು ತೆರೆದುಕೊಡಲಿಲ್ಲವೇ? | أَلَمۡ نَشۡرَحۡ لَكَ صَدۡرَكَ ١ |
| 2. | ನಾವು ನಿಮ್ಮಿಂದ ನಿಮ್ಮ ಭಾರವನ್ನು ಇಳಿಸಿದೆವು. | وَوَضَعۡنَا عَنكَ وِزۡرَكَ ٢ |
| 3. | ಅಂದರೆ ನಿಮ್ಮ ಬೆನ್ನು ಮುರಿಯುತ್ತಿದ್ದ (ಭಾರವನ್ನು). | ٱلَّذِيٓ أَنقَضَ ظَهۡرَكَ ٣ |
| 4. | ನಾವು ನಿಮ್ಮ ಕೀರ್ತಿಯನ್ನು ಉತ್ತುಂಗಕ್ಕೇರಿಸಿದೆವು. | وَرَفَعۡنَا لَكَ ذِكۡرَكَ ٤ |
| 5. | ನಿಶ್ಚಯವಾಗಿಯೂ ಕಷ್ಟದೊಂದಿಗೆ ಸುಲಭವಿದೆ. | فَإِنَّ مَعَ ٱلۡعُسۡرِ يُسۡرًا ٥ |
| 6. | ನಿಶ್ಚಯವಾಗಿಯೂ ಕಷ್ಟದೊಂದಿಗೆ ಸುಲಭವಿದೆ. | إِنَّ مَعَ ٱلۡعُسۡرِ يُسۡرٗا ٦ |
| 7. | ಆದ್ದರಿಂದ ನಿಮಗೆ ಬಿಡುವು ದೊರೆತರೆ ಆರಾಧನೆಗಳಲ್ಲಿ ಮುಳುಗಿರಿ. | فَإِذَا فَرَغۡتَ فَٱنصَبۡ ٧ |
| 8. | ನಿಮ್ಮ ಹಂಬಲವನ್ನು ನಿಮ್ಮ ಪರಿಪಾಲಕನ (ಅಲ್ಲಾಹನ) ಕಡೆಗೆ ತಿರುಗಿಸಿರಿ. | وَإِلَىٰ رَبِّكَ فَٱرۡغَب ٨ |

## 95. ಅತ್ತೀನ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسْمِ اللَّهِ الرَّحْمَٰنِ الرَّحِيمِ |
| 1. | ಅಂಜೂರ ಮತ್ತು ಆಲಿವ್‌ನ ಮೇಲಾಣೆ! | وَٱلتِّينِ وَٱلزَّيۡتُونِ ١ |
| 2. | ತೂರ್ ಸಿನಾಯ್ ಪರ್ವತದ ಮೇಲಾಣೆ! | وَطُورِ سِينِينَ ٢ |
| 3. | ಈ ನಿರ್ಭಯ ನಗರದ (ಮಕ್ಕಾದ) ಮೇಲಾಣೆ! | وَهَٰذَا ٱلۡبَلَدِ ٱلۡأَمِينِ ٣ |
| 4. | ನಿಶ್ಚಯವಾಗಿಯೂ ನಾವು ಮನುಷ್ಯನನ್ನು ಅತ್ಯುತ್ತಮ ರೂಪದಲ್ಲಿ ಸೃಷ್ಟಿಸಿದೆವು. | لَقَدۡ خَلَقۡنَا ٱلۡإِنسَٰنَ فِيٓ أَحۡسَنِ تَقۡوِيمٖ ٤ |
| 5. | ನಂತರ ಅವನನ್ನು ನೀಚರಲ್ಲಿ ನೀಚನಾಗಿ ಮಾಡಿದೆವು. | ثُمَّ رَدَدۡنَٰهُ أَسۡفَلَ سَٰفِلِينَ ٥ |
| 6. | ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಇದರಿಂದ ಹೊರತಾಗಿದ್ದಾರೆ. ಅವರಿಗೆ ಎಂದೂ ಮುಗಿಯದ ಪ್ರತಿಫಲವಿದೆ. | إِلَّا ٱلَّذِينَ ءَامَنُواْ وَعَمِلُواْ ٱلصَّٰلِحَٰتِ فَلَهُمۡ أَجۡرٌ غَيۡرُ مَمۡنُونٖ ٦ |
| 7. | ಹಾಗಾದರೆ ಪ್ರತಿಫಲ ದಿನವನ್ನು ನಿಷೇಧಿಸುವಂತೆ ನಿನ್ನನ್ನು ಉತ್ತೇಜಿಸುವುದೇನು? | فَمَا يُكَذِّبُكَ بَعۡدُ بِٱلدِّينِ ٧ |
| 8. | ಅಲ್ಲಾಹು ಎಲ್ಲಾ ತೀರ್ಪುಗಾರರಿಗೂ ತೀರ್ಪುಗಾರನಲ್ಲವೇ? | أَلَيۡسَ ٱللَّهُ بِأَحۡكَمِ ٱلۡحَٰكِمِينَ ٨ |

## 96. ಅಲ್-ಅಲಕ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسْمِ اللَّهِ الرَّحْمَٰنِ الرَّحِيمِ |
| 1. | ಸೃಷ್ಟಿಸಿದ ನಿಮ್ಮ ಪರಿಪಾಲಕನ (ಅಲ್ಲಾಹನ) ಹೆಸರಿನಿಂದ ಓದಿರಿ. | ٱقۡرَأۡ بِٱسۡمِ رَبِّكَ ٱلَّذِي خَلَقَ ١ |
| 2. | ಅವನು ಮನುಷ್ಯನನ್ನು ರಕ್ತಪಿಂಡದಿಂದ ಸೃಷ್ಟಿಸಿದನು. | خَلَقَ ٱلۡإِنسَٰنَ مِنۡ عَلَقٍ ٢ |
| 3. | ಓದಿರಿ. ನಿಮ್ಮ ಪರಿಪಾಲಕ (ಅಲ್ಲಾಹು) ಅತ್ಯುದಾರಿಯಾಗಿದ್ದಾನೆ. | ٱقۡرَأۡ وَرَبُّكَ ٱلۡأَكۡرَمُ ٣ |
| 4. | ಅವನು ಯಾರೆಂದರೆ ಲೇಖನಿಯ ಮೂಲಕ ಕಲಿಸಿದವನು. | ٱلَّذِي عَلَّمَ بِٱلۡقَلَمِ ٤ |
| 5. | ಮನುಷ್ಯನಿಗೆ ತಿಳಿಯದೇ ಇರುವುದನ್ನು ಅವನು ಕಲಿಸಿದನು.[1] | عَلَّمَ ٱلۡإِنسَٰنَ مَا لَمۡ يَعۡلَمۡ ٥ |
| 6. | ನಿಸ್ಸಂದೇಹವಾಗಿಯೂ ಮನುಷ್ಯನು ಎಲ್ಲೆ ಮೀರಿ ನಡೆಯುತ್ತಾನೆ. | كَلَّآ إِنَّ ٱلۡإِنسَٰنَ لَيَطۡغَىٰٓ ٦ |
| 7. | ಅದೇಕೆಂದರೆ, ಅವನು ಅವನನ್ನೇ ಸ್ವಯಂ-ಪರ್ಯಾಪ್ತನಾಗಿ | أَن رَّءَاهُ ٱسۡتَغۡنَىٰٓ ٧ |

[1] ಇವು ಪ್ರವಾದಿಯವರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಪ್ರಪ್ರಥಮವಾಗಿ ಅವತೀರ್ಣವಾದ ಐದು ವಚನಗಳು. ಅವರು ಹಿರಾ ಗುಹೆಯಲ್ಲಿದ್ದಾಗ ಜಿಬ್ರೀಲ್ (ಅವರ ಮೇಲೆ ಶಾಂತಿಯಿರಲಿ) ಈ ವಚನಗಳನ್ನು ಅವರಿಗೆ ಓದಿಕೊಟ್ಟರು.

ಕಾಣುತ್ತಾನೆ.

8. ನಿಶ್ಚಯವಾಗಿಯೂ ನಿಮ್ಮ ಪರಿಪಾಲಕನ (ಅಲ್ಲಾಹನ) ಬಳಿಗೆ ಮರಳಿ ಹೋಗಬೇಕಾಗಿದೆ. إِنَّ إِلَىٰ رَبِّكَ ٱلرُّجۡعَىٰٓ ٨

9. ತಡೆಯುವವನನ್ನು ನೀವು ನೋಡಿದ್ದೀರಾ?[1] أَرَءَيۡتَ ٱلَّذِي يَنۡهَىٰ ٩

10. ದಾಸನನ್ನು—ಅವನು ನಮಾಝ್ ಮಾಡುವಾಗ. عَبۡدًا إِذَا صَلَّىٰٓ ١٠

11. ನೀವು ನೋಡಿದ್ದೀರಾ—ಒಂದು ವೇಳೆ ಅವನು (ದಾಸನು) ಸನ್ಮಾರ್ಗದಲ್ಲಿದ್ದರೆ. أَرَءَيۡتَ إِن كَانَ عَلَى ٱلۡهُدَىٰٓ ١١

12. ಅಥವಾ ಅವನು ದೇವಭಯವಿಟ್ಟುಕೊಳ್ಳಲು ಆದೇಶಿಸಿದ್ದರೆ. أَوۡ أَمَرَ بِٱلتَّقۡوَىٰٓ ١٢

13. ನೀವು ನೋಡಿದ್ದೀರಾ—ಒಂದು ವೇಳೆ ಅವನು (ತಡೆಯುವವನು) ನಿಷೇಧಿಸಿದ್ದರೆ ಮತ್ತು ವಿಮುಖನಾಗಿದ್ದರೆ. أَرَءَيۡتَ إِن كَذَّبَ وَتَوَلَّىٰٓ ١٣

14. ಅಲ್ಲಾಹು ಅವನನ್ನು ನೋಡುತ್ತಿದ್ದಾನೆಂದು ಅವನಿಗೆ ತಿಳಿದಿಲ್ಲವೇ? أَلَمۡ يَعۡلَم بِأَنَّ ٱللَّهَ يَرَىٰ ١٤

15. ಅವನು ದೂರ ಸರಿಯದಿದ್ದರೆ ನಾವು ಖಂಡಿತವಾಗಿಯೂ ಅವನ ಮುಂದಲೆಯನ್ನು ಹಿಡಿದು ಎಳೆಯುವೆವು. كَلَّا لَئِن لَّمۡ يَنتَهِ لَنَسۡفَعَۢا بِٱلنَّاصِيَةِ ١٥

16. ಸುಳ್ಳು ಹೇಳುವ, ಪಾಪವೆಸಗುವ ಮುಂದಲೆ. نَاصِيَةٖ كَٰذِبَةٍ خَاطِئَةٖ ١٦

17. ಅವನು ತನ್ನ ಸಭಾ ಸದಸ್ಯರನ್ನು ಕರೆಯಲಿ. فَلۡيَدۡعُ نَادِيَهُۥ ١٧

18. ನಾವು (ನರಕದಲ್ಲಿ) ಶಿಕ್ಷೆ ನೀಡುವ ದೇವದೂತರನ್ನು ಕರೆಯುವೆವು. سَنَدۡعُ ٱلزَّبَانِيَةَ ١٨

19. ಎಚ್ಚರಾ! ಅವನ ಮಾತನ್ನು ಎಂದಿಗೂ ಕೇಳಬೇಡಿ. (ಅಲ್ಲಾಹನಿಗೆ) ಸಾಷ್ಟಾಂಗ ಮಾಡಿರಿ ಮತ್ತು ಅವನಿಗೆ ಸಮೀಪವಾಗಿರಿ. كَلَّا لَا تُطِعۡهُ وَٱسۡجُدۡ وَٱقۡتَرِب ١٩

[1] ತಡೆಯುವವನು ಎಂದರೆ ಪ್ರವಾದಿಯ ಬದ್ಧ ವೈರಿಯಾಗಿದ್ದ ಸತ್ಯನಿಷೇಧಿಗಳ ಮುಖಂಡ ಅಬೂಜಹಲ್. ದಾಸನು ಎಂದರೆ ಪ್ರವಾದಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ). ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ನಮಾಝ್ ಮಾಡುತ್ತಿದ್ದಾಗ ಅಬೂಜಹಲ್ ತಡೆಯಲು ಪ್ರಯತ್ನಿಸಿದ್ದನು.

# 97. ಅಲ್-ಕದ್ರ್

| | |
|---|---|
| ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. ನಿಶ್ಚಯವಾಗಿಯೂ ನಾವು ಇದನ್ನು (ಕುರ್‌ಆನನ್ನು) ನಿರ್ಣಯದ ರಾತ್ರಿಯಲ್ಲಿ ಅವತೀರ್ಣಗೊಳಿಸಿದ್ದೇವೆ.[1] | إِنَّآ أَنزَلۡنَٰهُ فِي لَيۡلَةِ ٱلۡقَدۡرِ ١ |
| 2. ನಿರ್ಣಯದ ರಾತ್ರಿ ಏನೆಂದು ನಿಮಗೇನು ಗೊತ್ತು? | وَمَآ أَدۡرَىٰكَ مَا لَيۡلَةُ ٱلۡقَدۡرِ ٢ |
| 3. ನಿರ್ಣಯದ ರಾತ್ರಿಯು ಸಾವಿರ ತಿಂಗಳುಗಳಿಗಿಂತ ಶ್ರೇಷ್ಠವಾಗಿದೆ. | لَيۡلَةُ ٱلۡقَدۡرِ خَيۡرٞ مِّنۡ أَلۡفِ شَهۡرٖ ٣ |
| 4. ಆ ರಾತ್ರಿಯಲ್ಲಿ ಎಲ್ಲಾ ಕಾರ್ಯಗಳನ್ನು ಜಾರಿಗೊಳಿಸುವುದ-ಕ್ಕಾಗಿ ದೇವದೂತರುಗಳು ಮತ್ತು ರೂಹ್ (ಜಿಬ್ರೀಲ್) ತಮ್ಮ ಪರಿಪಾಲಕನ (ಅಲ್ಲಾಹನ) ಅಪ್ಪಣೆಯೊಂದಿಗೆ ಇಳಿದು ಬರುವರು. | تَنَزَّلُ ٱلۡمَلَٰٓئِكَةُ وَٱلرُّوحُ فِيهَا بِإِذۡنِ رَبِّهِم مِّن كُلِّ أَمۡرٖ ٤ |
| 5. ಆ ರಾತ್ರಿಯು ಪ್ರಭಾತೋದಯದ ತನಕ ಸಂಪೂರ್ಣ ಶಾಂತಿಯುತವಾಗಿರುವುದು. | سَلَٰمٌ هِيَ حَتَّىٰ مَطۡلَعِ ٱلۡفَجۡرِ ٥ |

# 98. ಅಲ್-ಬಯ್ಯಿನ

| | |
|---|---|
| ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. ಗ್ರಂಥದವರಲ್ಲಿ ಸೇರಿದ ಸತ್ಯನಿಷೇಧಿಗಳು ಮತ್ತು ಬಹುದೇ-ವವಿಶ್ವಾಸಿಗಳು ಸ್ಪಷ್ಟ ಸಾಕ್ಷ್ಯವು ಅವರ ಬಳಿಗೆ ಬರುವ ತನಕ (ಸತ್ಯನಿಷೇಧದಿಂದ) ದೂರವಾಗುವವರಾಗಿರಲಿಲ್ಲ. | لَمۡ يَكُنِ ٱلَّذِينَ كَفَرُواْ مِنۡ أَهۡلِ ٱلۡكِتَٰبِ وَٱلۡمُشۡرِكِينَ مُنفَكِّينَ حَتَّىٰ تَأۡتِيَهُمُ ٱلۡبَيِّنَةُ ١ |
| 2. (ಆ ಸಾಕ್ಷ್ಯವು) ಪರಿಶುದ್ಧ ಗ್ರಂಥಗಳನ್ನು ಓದಿಕೊಡುವ ಅಲ್ಲಾಹನ ಕಡೆಯ ಸಂದೇಶವಾಹಕರಾಗಿದ್ದಾರೆ. | رَسُولٞ مِّنَ ٱللَّهِ يَتۡلُواْ صُحُفٗا مُّطَهَّرَةٗ ٢ |
| 3. ಅದರಲ್ಲಿ (ಆ ಗ್ರಂಥದಲ್ಲಿ) ಸರಿಯಾದ ನಿಯಮಗಳಿವೆ. | فِيهَا كُتُبٞ قَيِّمَةٞ ٣ |
| 4. ಗ್ರಂಥ ನೀಡಲಾದವರು ಅವರ ಬಳಿಗೆ ಸ್ಪಷ್ಟ ಸಾಕ್ಷ್ಯವು ಬಂದ ಬಳಿಕವೇ (ಭಿನ್ನಮತ ತಳೆದು) ವಿಭಿನ್ನ ಪಂಗಡಗಳಾದರು. | وَمَا تَفَرَّقَ ٱلَّذِينَ أُوتُواْ ٱلۡكِتَٰبَ إِلَّا مِنۢ بَعۡدِ مَا جَآءَتۡهُمُ ٱلۡبَيِّنَةُ ٤ |
| 5. ಧರ್ಮವನ್ನು ಅಲ್ಲಾಹನಿಗೆ ನಿಷ್ಕಳಂಕವಾಗಿಸಿ ಏಕನಿಷ್ಠರಾಗಿ ಅವನನ್ನು ಮಾತ್ರ ಆರಾಧಿಸಿರಿ, ನಮಾಝ್ ಸಂಸ್ಥಾಪಿಸಿರಿ ಮತ್ತು | وَمَآ أُمِرُوٓاْ إِلَّا لِيَعۡبُدُواْ ٱللَّهَ مُخۡلِصِينَ لَهُ ٱلدِّينَ حُنَفَآءَ وَيُقِيمُواْ ٱلصَّلَوٰةَ وَيُؤۡتُواْ ٱلزَّكَوٰةَۚ وَذَٰلِكَ |

[1] ನಿರ್ಣಯದ ರಾತ್ರಿ (ಲೈಲತುಲ್ ಕದ್ರ್) ಯಲ್ಲಿ ಪವಿತ್ರ ಕುರ್‌ಆನ್ ಅನ್ನು ಲೌಹುಲ್ ಮಹ್ಫೂಝ್ (ಸುರಕ್ಷಿತ ಫಲಕ) ನಿಂದ ಆಕಾಶದಲ್ಲಿರುವ ಬೈತುಲ್ ಇಝ್ಝತ್‌ಗೆ ಇಳಿಸಲಾಯಿತು. ಅಲ್ಲಿಂದ ಅದು 23 ವರ್ಷಗಳ ಕಾಲ ಹಂತ ಹಂತವಾಗಿ ಮತ್ತು ಸಾಂದರ್ಭಿಕವಾಗಿ ಭೂಲೋಕಕ್ಕೆ ಅವತೀರ್ಣವಾಯಿತು. ನಿರ್ಣಯದ ರಾತ್ರಿ (ಲೈಲತುಲ್ ಕದ್ರ್) ರಮದಾನ್ ತಿಂಗಳ ಕೊನೆಯ ಹತ್ತರ ಬೆಸ ರಾತ್ರಿಗಳಲ್ಲಿ ಬರುತ್ತದೆ.

ಝಕಾತ್ ನೀಡಿರಿ ಎಂದಲ್ಲದೆ ಬೇರೇನನ್ನೂ ಅವರಿಗೆ ಆದೇಶಿಸ-ಲಾಗಿರಲಿಲ್ಲ. ಅದೇ ನೇರವಾದ ಧರ್ಮ. | دِينُ ٱلْقَيِّمَةِ ٥

6. ನಿಶ್ಚಯವಾಗಿಯೂ ಗ್ರಂಥದವರಲ್ಲಿ ಸೇರಿದ ಸತ್ಯನಿಷೇಧಿಗಳು ಮತ್ತು ಬಹುದೇವವಿಶ್ವಾಸಿಗಳು ನರಕವಾಸಿಗಳಾಗಿದ್ದಾರೆ. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅವರು ಸೃಷ್ಟಿಗಳಲ್ಲೇ ಅತಿನಿಕೃಷ್ಟರು.

إِنَّ ٱلَّذِينَ كَفَرُواْ مِنْ أَهْلِ ٱلْكِتَٰبِ وَٱلْمُشْرِكِينَ فِي نَارِ جَهَنَّمَ خَٰلِدِينَ فِيهَآۚ أُوْلَٰٓئِكَ هُمْ شَرُّ ٱلْبَرِيَّةِ ٦

7. ನಿಶ್ಚಯವಾಗಿಯೂ ಸತ್ಯವಿಶ್ವಾಸಿಗಳು ಮತ್ತು ಸತ್ಕರ್ಮವೆಸಗಿದವರು ಯಾರೋ ಅವರು ಸೃಷ್ಟಿಗಳಲ್ಲೇ ಅತಿಶ್ರೇಷ್ಠರು.

إِنَّ ٱلَّذِينَ ءَامَنُواْ وَعَمِلُواْ ٱلصَّٰلِحَٰتِ أُوْلَٰٓئِكَ هُمْ خَيْرُ ٱلْبَرِيَّةِ ٧

8. ಅವರಿಗೆ ಅವರ ಪರಿಪಾಲಕನ (ಅಲ್ಲಾಹನ) ಬಳಿಯಿರುವ ಪ್ರತಿಫಲವು ಶಾಶ್ವತವಾಸದ ಸ್ವರ್ಗೋದ್ಯಾನಗಳಾಗಿವೆ. ಅವುಗಳ ತಳಭಾಗದಿಂದ ನದಿಗಳು ಹರಿಯುತ್ತವೆ. ಅವರು ಅದರಲ್ಲಿ ಶಾಶ್ವತವಾಗಿ ವಾಸಿಸುವರು. ಅಲ್ಲಾಹು ಅವರ ಬಗ್ಗೆ ಸಂಪ್ರೀನಾಗಿದ್ದಾನೆ ಮತ್ತು ಅವರು ಅಲ್ಲಾಹನ ಬಗ್ಗೆ ಸಂಪ್ರೀ-ತರಾಗಿದ್ದಾರೆ. ಇದು ತನ್ನ ಪರಿಪಾಲಕನನ್ನು (ಅಲ್ಲಾಹನನ್ನು) ಭಯಪಡುವವನಿಗೆ ಇರುವುದಾಗಿದೆ.

جَزَآؤُهُمْ عِندَ رَبِّهِمْ جَنَّٰتُ عَدْنٍ تَجْرِي مِن تَحْتِهَا ٱلْأَنْهَٰرُ خَٰلِدِينَ فِيهَآ أَبَدًاۖ رَّضِيَ ٱللَّهُ عَنْهُمْ وَرَضُواْ عَنْهُۚ ذَٰلِكَ لِمَنْ خَشِيَ رَبَّهُۥ ٨

# 99. ಅಝ್ಝಿಲ್‌ಝಲ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಭೂಮಿಯನ್ನು ಸಂಪೂರ್ಣವಾಗಿ ನಡುಗಿಸಲಾಗುವಾಗ, | إِذَا زُلْزِلَتِ ٱلْأَرْضُ زِلْزَالَهَا ١

2. ಅದು (ಭೂಮಿ) ಅದರ ಭಾರಗಳನ್ನು ಹೊರಹಾಕುವಾಗ,[1] | وَأَخْرَجَتِ ٱلْأَرْضُ أَثْقَالَهَا ٢

3. “ಇದಕ್ಕೇನಾಗಿದೆ?” ಎಂದು ಮನುಷ್ಯನು ಕೇಳುವನು. | وَقَالَ ٱلْإِنسَٰنُ مَا لَهَا ٣

4. ಅಂದು ಅದು (ಭೂಮಿ) ತನ್ನ ಎಲ್ಲಾ ಸಮಾಚಾರಗಳನ್ನು ತಿಳಿಸುವುದು. | يَوْمَئِذٍ تُحَدِّثُ أَخْبَارَهَا ٤

5. ನಿಮ್ಮ ಪರಿಪಾಲಕನು (ಅಲ್ಲಾಹು) ಅದಕ್ಕೆ ಆದೇಶ ನೀಡಿದ ಕಾರಣದಿಂದ. | بِأَنَّ رَبَّكَ أَوْحَىٰ لَهَا ٥

6. ಅಂದು ಮನುಷ್ಯರು ವಿಭಿನ್ನ ಗುಂಪುಗಳಾಗಿ ಮರಳುವರು—ಅವರಿಗೆ ಅವರ ಕರ್ಮಗಳನ್ನು ತೋರಿಸಲಾಗುವುದಕ್ಕಾಗಿ. | يَوْمَئِذٍ يَصْدُرُ ٱلنَّاسُ أَشْتَاتًا لِّيُرَوْاْ أَعْمَٰلَهُمْ ٦

[1] ಅಂದರೆ ಭೂಮಿ ತೀವ್ರವಾಗಿ ಕಂಪಿಸಿ ಅದರಲ್ಲಿರುವ ಎಲ್ಲವೂ ನುಚ್ಚು ನೂರಾಗುತ್ತದೆ. ಇದು ಕಹಳೆಯಲ್ಲಿ ಪ್ರಥಮ ಬಾರಿ ಊದುವಾಗ ಸಂಭವಿಸುತ್ತದೆ.

| | | |
|---|---|---|
| 7. | ಆದ್ದರಿಂದ ಯಾರು ಒಂದು ಅಣುವಿನ ತೂಕದಷ್ಟು ಒಳಿತು ಮಾಡಿದ್ದಾನೋ ಅವನು ಅದನ್ನು ನೋಡುವನು. | فَمَن يَعۡمَلۡ مِثۡقَالَ ذَرَّةٍ خَيۡرٗا يَرَهُۥ ٧ |
| 8. | ಯಾರು ಒಂದು ಅಣುವಿನ ತೂಕದಷ್ಟು ಕೆಡುಕು ಮಾಡಿದ್ದಾನೋ ಅವನು ಅದನ್ನು ನೋಡುವನು. | وَمَن يَعۡمَلۡ مِثۡقَالَ ذَرَّةٖ شَرّٗا يَرَهُۥ ٨ |

# 100. ಅಲ್-ಆದಿಯಾತ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ಏದುಸಿರು ಬಿಡುತ್ತಾ ದೌಡಾಯಿಸುವ ಕುದುರೆಗಳ ಮೇಲಾಣೆ! | وَٱلۡعَٰدِيَٰتِ ضَبۡحٗا ١ |
| 2. | ಗೊರಸನ್ನು ಕಲ್ಲಿಗೆ ಉಜ್ಜಿ ಬೆಂಕಿ ಕಿಡಿ ಹಾರಿಸುವವುಗಳ ಮೇಲಾಣೆ! | فَٱلۡمُورِيَٰتِ قَدۡحٗا ٢ |
| 3. | ಮುಂಜಾನೆಯ ಸಮಯದಲ್ಲಿ ಆಕ್ರಮಣ ಮಾಡುವವುಗಳ ಮೇಲಾಣೆ! | فَٱلۡمُغِيرَٰتِ صُبۡحٗا ٣ |
| 4. | ಆಗ ಅವು ಧೂಳನ್ನು ಹರಡುತ್ತವೆ. | فَأَثَرۡنَ بِهِۦ نَقۡعٗا ٤ |
| 5. | ನಂತರ ಅದರ ಮೂಲಕ ಸೈನ್ಯಗಳ ನಡುಭಾಗಕ್ಕೆ ನುಗ್ಗುತ್ತವೆ. | فَوَسَطۡنَ بِهِۦ جَمۡعًا ٥ |
| 6. | ನಿಶ್ಚಯವಾಗಿಯೂ ಮನುಷ್ಯನು ತನ್ನ ಪರಿಪಾಲಕನಿಗೆ (ಅಲ್ಲಾಹನಿಗೆ) ಕೃತಜ್ಞತೆಯಿಲ್ಲದವನಾಗಿದ್ದಾನೆ. | إِنَّ ٱلۡإِنسَٰنَ لِرَبِّهِۦ لَكَنُودٞ ٦ |
| 7. | ನಿಶ್ಚಯವಾಗಿಯೂ ಅವನೇ ಅದಕ್ಕೆ ಸಾಕ್ಷಿಯಾಗಿದ್ದಾನೆ. | وَإِنَّهُۥ عَلَىٰ ذَٰلِكَ لَشَهِيدٞ ٧ |
| 8. | ಅವನಿಗೆ ಸಂಪತ್ತಿನ ಮೇಲೆ ಅತಿಯಾದ ಮೋಹವಿದೆ. | وَإِنَّهُۥ لِحُبِّ ٱلۡخَيۡرِ لَشَدِيدٌ ٨ |
| 9. | ಸಮಾಧಿಗಳಲ್ಲಿರುವುದನ್ನು ಹೊರತೆಗೆಯಲಾಗುವ ಆ ಸಮಯದ ಬಗ್ಗೆ ಅವನಿಗೆ ತಿಳಿದಿಲ್ಲವೇ? | ۞أَفَلَا يَعۡلَمُ إِذَا بُعۡثِرَ مَا فِي ٱلۡقُبُورِ ٩ |
| 10. | ಹೃದಯಗಳಲ್ಲಿರುವ ರಹಸ್ಯ ಮಾತುಗಳನ್ನು ಬಹಿರಂಗಪಡಿಸಲಾಗುವ (ಆ ಸಮಯದ ಬಗ್ಗೆ). | وَحُصِّلَ مَا فِي ٱلصُّدُورِ ١٠ |
| 11. | ನಿಶ್ಚಯವಾಗಿಯೂ ಅಂದು ಅವರ ಪರಿಪಾಲಕನು (ಅಲ್ಲಾಹು) ಅವರ ಬಗ್ಗೆ ಸೂಕ್ಷ್ಮಜ್ಞಾನವುಳ್ಳವನಾಗಿದ್ದಾನೆ. | إِنَّ رَبَّهُم بِهِمۡ يَوۡمَئِذٖ لَّخَبِيرُۢ ١١ |

# 101. ಅಲ್-ಕಾರಿಅ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ — بِسۡمِ ٱللَّهِ ٱلرَّحۡمَٰنِ ٱلرَّحِيمِ

| | | |
|---|---|---|
| 1. | ಆ ಭಯಾನಕ ಸದ್ದು. | ٱلۡقَارِعَةُ ﴿١﴾ |
| 2. | ಆ ಭಯಾನಕ ಸದ್ದು ಎಂದರೇನು? | مَا ٱلۡقَارِعَةُ ﴿٢﴾ |
| 3. | ಆ ಭಯಾನಕ ಸದ್ದು ಏನೆಂದು ನಿಮಗೇನು ಗೊತ್ತು? | وَمَآ أَدۡرَىٰكَ مَا ٱلۡقَارِعَةُ ﴿٣﴾ |
| 4. | ಮನುಷ್ಯರು ಚದುರಿದ ಹಾತೆಗಳಂತಾಗುವ ದಿನ. | يَوۡمَ يَكُونُ ٱلنَّاسُ كَٱلۡفَرَاشِ ٱلۡمَبۡثُوثِ ﴿٤﴾ |
| 5. | ಪರ್ವತಗಳು ಕೆದರಿದ ತುಪ್ಪಳದಂತಾಗುವ ದಿನ. | وَتَكُونُ ٱلۡجِبَالُ كَٱلۡعِهۡنِ ٱلۡمَنفُوشِ ﴿٥﴾ |
| 6. | ಆಗ ಯಾರ ತಕ್ಕಡಿಗಳು ಭಾರವಾಗುತ್ತದೋ, | فَأَمَّا مَن ثَقُلَتۡ مَوَٰزِينُهُۥ ﴿٦﴾ |
| 7. | ಅವನು ಸಂತೃಪ್ತ ಜೀವನದಲ್ಲಿರುವನು. | فَهُوَ فِي عِيشَةٖ رَّاضِيَةٖ ﴿٧﴾ |
| 8. | ಆದರೆ ಯಾರ ತಕ್ಕಡಿಗಳು ಹಗುರವಾಗುತ್ತದೋ, | وَأَمَّا مَنۡ خَفَّتۡ مَوَٰزِينُهُۥ ﴿٨﴾ |
| 9. | ಅವನ ವಾಸಸ್ಥಳವು ಹಾವಿಯ ಆಗಿರುವುದು. | فَأُمُّهُۥ هَاوِيَةٞ ﴿٩﴾ |
| 10. | ಅದು (ಹಾವಿಯ) ಏನೆಂದು ನಿಮಗೇನು ಗೊತ್ತು? | وَمَآ أَدۡرَىٰكَ مَا هِيَهۡ ﴿١٠﴾ |
| 11. | ಅದು ತೀವ್ರ ಶಾಖವಿರುವ ಬೆಂಕಿಯಾಗಿದೆ. | نَارٌ حَامِيَةُۢ ﴿١١﴾ |

# 102. ಅತ್ತಕಾಸುರ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ — بِسۡمِ ٱللَّهِ ٱلرَّحۡمَٰنِ ٱلرَّحِيمِ

| | | |
|---|---|---|
| 1. | ಹೆಚ್ಚು ಸಿಗಬೇಕೆಂಬ ನಿಮ್ಮ ದುರಾಸೆಯು ನಿಮ್ಮನ್ನು ಅಲಕ್ಷ್ಯದಲ್ಲಿರಿಸಿದೆ. | أَلۡهَىٰكُمُ ٱلتَّكَاثُرُ ﴿١﴾ |
| 2. | ಎಲ್ಲಿಯವರೆಗೆಂದರೆ ನೀವು ಸಮಾಧಿ ಸ್ಥಳವನ್ನು ತಲುಪುವ ತನಕ. | حَتَّىٰ زُرۡتُمُ ٱلۡمَقَابِرَ ﴿٢﴾ |
| 3. | ಇಲ್ಲವೇ ಇಲ್ಲ, ಸದ್ಯವೇ ನೀವು ತಿಳಿಯುವಿರಿ. | كَلَّا سَوۡفَ تَعۡلَمُونَ ﴿٣﴾ |
| 4. | ಇಲ್ಲವೇ ಇಲ್ಲ, ನಂತರ ನಿಮಗೆ (ಎಲ್ಲವೂ) ತಿಳಿಯಲಿದೆ. | ثُمَّ كَلَّا سَوۡفَ تَعۡلَمُونَ ﴿٤﴾ |
| 5. | ಇಲ್ಲವೇ ಇಲ್ಲ, ನೀವು ದೃಢವಾಗಿ ತಿಳಿದಿರುತ್ತಿದ್ದರೆ. | كَلَّا لَوۡ تَعۡلَمُونَ عِلۡمَ ٱلۡيَقِينِ ﴿٥﴾ |
| 6. | ಖಂಡಿತವಾಗಿಯೂ ನೀವು ನರಕವನ್ನು ನೋಡುವಿರಿ. | لَتَرَوُنَّ ٱلۡجَحِيمَ ﴿٦﴾ |
| 7. | ನಂತರ ನೀವು ಅದನ್ನು ಖಚಿತವಾದ ಕಣ್ಣುಗಳಿಂದ ನೋಡುವಿರಿ. | ثُمَّ لَتَرَوُنَّهَا عَيۡنَ ٱلۡيَقِينِ ﴿٧﴾ |

8. ನಂತರ ಆ ದಿನದಂದು (ನಿಮಗೆ ದಯಪಾಲಿಸಲಾದ) ಎಲ್ಲಾ ಅನುಗ್ರಹಗಳ ಬಗ್ಗೆ ನಿಮ್ಮೊಡನೆ ಖಂಡಿತವಾಗಿಯೂ ಪ್ರಶ್ನಿಸಲಾಗುವುದು. — ثُمَّ لَتُسۡـَٔلُنَّ يَوۡمَئِذٍ عَنِ ٱلنَّعِيمِ ٨

# 103. ಅಲ್-ಅಸ್ರ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ — بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಕಾಲದ ಮೇಲಾಣೆ! — وَٱلۡعَصۡرِ ١

2. ನಿಶ್ಚಯವಾಗಿಯೂ ಮನುಷ್ಯರು ಸಂಪೂರ್ಣ ನಷ್ಟದಲ್ಲಿದ್ದಾರೆ. — إِنَّ ٱلۡإِنسَٰنَ لَفِي خُسۡرٍ ٢

3. ಸತ್ಯವಿಶ್ವಾಸಿಗಳು, ಸತ್ಕರ್ಮವೆಸಗಿದವರು, ಪರಸ್ಪರ ಸತ್ಯವನ್ನು ಉಪದೇಶಿಸಿದವರು ಮತ್ತು ಪರಸ್ಪರ ತಾಳ್ಮೆಯನ್ನು ಉಪದೇಶಿಸಿದವರು ಇದಕ್ಕೆ ಹೊರತಾಗಿದ್ದಾರೆ. — إِلَّا ٱلَّذِينَ ءَامَنُواْ وَعَمِلُواْ ٱلصَّٰلِحَٰتِ وَتَوَاصَوۡاْ بِٱلۡحَقِّ وَتَوَاصَوۡاْ بِٱلصَّبۡرِ ٣

# 104. ಅಲ್-ಹುಮಝ

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ — بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಅವಹೇಳನ ಮಾಡುವ ಮತ್ತು ಪರದೂಷಣೆ ಮಾಡುವ ಪ್ರತಿಯೊಬ್ಬನಿಗೂ ವಿನಾಶವಿದೆ. — وَيۡلٞ لِّكُلِّ هُمَزَةٖ لُّمَزَةٍ ١

2. ಅವನು ಯಾರೆಂದರೆ ಸಂಪತ್ತು ಶೇಖರಿಸುವವನು ಮತ್ತು ಅದನ್ನು ಎಣಿಸುವವನು. — ٱلَّذِي جَمَعَ مَالٗا وَعَدَّدَهُۥ ٢

3. ಅವನ ಸಂಪತ್ತು ಅವನನ್ನು ಶಾಶ್ವತಗೊಳಿಸುತ್ತದೆ ಎಂದು ಅವನು ಭಾವಿಸುತ್ತಾನೆ. — يَحۡسَبُ أَنَّ مَالَهُۥٓ أَخۡلَدَهُۥ ٣

4. ಇಲ್ಲವೇ ಇಲ್ಲ, ಅವನನ್ನು ತುಂಡು ತುಂಡಾಗಿ ಕತ್ತರಿಸುವ ಬೆಂಕಿಗೆ ಖಂಡಿತ ಎಸೆಯಲಾಗುವುದು. — كَلَّاۖ لَيُنۢبَذَنَّ فِي ٱلۡحُطَمَةِ ٤

5. ತುಂಡು ತುಂಡಾಗಿ ಕತ್ತರಿಸುವ ಬೆಂಕಿ ಏನೆಂದು ನಿಮಗೇನು ಗೊತ್ತು? — وَمَآ أَدۡرَىٰكَ مَا ٱلۡحُطَمَةُ ٥

6. ಅದು ಭುಗಿಲೆದ್ದು ಉರಿಸಲಾದ ಅಲ್ಲಾಹನ ಬೆಂಕಿಯಾಗಿದೆ. — نَارُ ٱللَّهِ ٱلۡمُوقَدَةُ ٦

7. ಅದು ಹೃದಯಗಳ ಮೇಲೆ ಏರಿ ಬರುತ್ತದೆ. — ٱلَّتِي تَطَّلِعُ عَلَى ٱلۡأَفۡـِٔدَةِ ٧

8. ಅದು ಅವರನ್ನು ಎಲ್ಲಾ ಕಡೆಗಳಿಂದಲೂ ಮುಚ್ಚಿಕೊಳ್ಳುತ್ತದೆ. إِنَّهَا عَلَيۡهِم مُّؤۡصَدَةٞ ﴿٨﴾

9. ದೊಡ್ಡ ದೊಡ್ಡ ಸ್ತಂಭಗಳಲ್ಲಿ. فِي عَمَدٖ مُّمَدَّدَةِۭ ﴿٩﴾

# 105. ಅಲ್-ಫೀಲ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ بِسۡمِ ٱللَّهِ ٱلرَّحۡمَٰنِ ٱلرَّحِيمِ

1. ನಿಮ್ಮ ಪರಿಪಾಲಕನು (ಅಲ್ಲಾಹು) ಆನೆಯ ಜನರೊಡನೆ ಹೇಗೆ ವರ್ತಿಸಿದನೆಂದು ನೀವು ನೋಡಿಲ್ಲವೇ?[1] أَلَمۡ تَرَ كَيۡفَ فَعَلَ رَبُّكَ بِأَصۡحَٰبِ ٱلۡفِيلِ ﴿١﴾

2. ಅವನು ಅವರ ತಂತ್ರವನ್ನು ವಿಫಲಗೊಳಿಸಲಿಲ್ಲವೇ? أَلَمۡ يَجۡعَلۡ كَيۡدَهُمۡ فِي تَضۡلِيلٖ ﴿٢﴾

3. ಅವನು ಅವರ ಮೇಲೆ ಹಕ್ಕಿಗಳನ್ನು ಹಿಂಡು ಹಿಂಡಾಗಿ ಕಳುಹಿಸಿದನು. وَأَرۡسَلَ عَلَيۡهِمۡ طَيۡرًا أَبَابِيلَ ﴿٣﴾

4. ಅವು ಸುಟ್ಟ ಜೇಡಿಮಣ್ಣಿನ ಕಲ್ಲುಗಳನ್ನು ಅವರ ಮೇಲೆ ಎಸೆಯುತ್ತಿದ್ದವು. تَرۡمِيهِم بِحِجَارَةٖ مِّن سِجِّيلٖ ﴿٤﴾

5. ನಂತರ ಅವನು ಅವರನ್ನು (ಜಾನುವಾರುಗಳು) ತಿಂದ ಒಣಹುಲ್ಲಿನಂತೆ ಮಾಡಿದನು. فَجَعَلَهُمۡ كَعَصۡفٖ مَّأۡكُولِۭ ﴿٥﴾

---

[1] ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಜನನಕ್ಕಿಂತ ಕೆಲವೇ ತಿಂಗಳ ಹಿಂದೆ ಸಂಭವಿಸಿದ ಒಂದು ಘಟನೆಯನ್ನು ಇಲ್ಲಿ ತಿಳಿಸಲಾಗಿದೆ. ಅಂದು ಯಮನ್ ರಾಜ್ಯವು ಇಥಿಯೋಪಿಯಾ ದೇಶದ ರಾಜನ ವಶದಲ್ಲಿತ್ತು. ಯಮನ್ ರಾಜ್ಯವನ್ನು ಅವನ ಅಧೀನದಲ್ಲಿದ್ದ ಅಬ್ರಹತ್ ಎಂಬ ಅರಸ ಆಳುತ್ತಿದ್ದನು. ಯಮನ್‌ನಲ್ಲಿ ಮಹಾ ದೇವಾಲಯವೊಂದನ್ನು ನಿರ್ಮಿಸಿ ಅದನ್ನು ಅರಬ್ಬರ ತೀರ್ಥಾಟನಾ ಕೇಂದ್ರವಾಗಿ ಮಾಡಿ ಅವರ ಗಮನವನ್ನು ಕಅಬಾಲಯದಿಂದ ಯಮನ್‌ಗೆ ತಿರುಗಿಸಬೇಕೆಂದು ಆತ ಯೋಜನೆ ಹಾಕಿದ್ದ. ಆದರೆ ಅರಬ್ಬರು ಅದನ್ನು ತಿರಸ್ಕರಿಸಿದ್ದರಿಂದ ಹತಾಶನಾದ ಆತ ಕಅಬಾಲಯವನ್ನೇ ಕೆಡವಿ ಹಾಕಲು ಆನೆಯ ಸೈನ್ಯದೊಂದಿಗೆ ಮಕ್ಕಾಗೆ ಹೊರಟ. ಕಅಬಾಲಯದ ಪರಿಪಾಲಕರಾಗಿದ್ದ ಕುರೈಶರಿಗೆ ಅವನ ಮಹಾ ಸೈನ್ಯವನ್ನು ಎದುರಿಸುವ ತಾಕತ್ತಿರಲಿಲ್ಲ. ಪ್ರತಿರೋಧಿಸಲು ಸಾಧ್ಯವಾಗದ್ದರಿಂದ ಅವರು ಅದರ ಸಂರಕ್ಷಣೆಯ ಭಾರವನ್ನು ಅಲ್ಲಾಹನಿಗೆ ವಹಿಸಿಕೊಟ್ಟು ಗುಡ್ಡಗಳಿಗೆ ಹೋಗಿ ನೆಲೆಸಿದರು. ಈ ಸಂದರ್ಭದಲ್ಲಿ ಅಸಾಮಾನ್ಯ ಘಟನೆಯ ಮೂಲಕ ಅಲ್ಲಾಹು ಅಬ್ರಹತ್‌ನ ಸೈನ್ಯವನ್ನು ನಾಶ ಮಾಡಿದನು. ಸುಟ್ಟ ಜೇಡಿ ಮಣ್ಣಿನ ಕಲ್ಲುಗಳನ್ನು ಅವರ ಮೇಲೆಸೆಯಲು ಅಲ್ಲಾಹು ಹಕ್ಕಿಗಳ ಗುಂಪುಗಳನ್ನು ಕಳುಹಿಸಿದನು. ಆ ಕಲ್ಲುಗಳು ಅವರನ್ನು ನಾಶ ಮಾಡಿದವು. ಪವಿತ್ರ ಕಅಬಾಲಯಕ್ಕೆ ಯಾವುದೇ ಹಾನಿಯಾಗದೆ ದಾಳಿಕೋರರು ನಾಶವಾದರು. ಪ್ರವಾದಿ ಮುಹಮ್ಮದ್ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ರವರು ಪ್ರವಾದಿಯಾದ ಆರಂಭಕಾಲದಲ್ಲಿ ಕುರೈಶರು ಅಬ್ರಹತ್‌ನ ಈ ನಾಶವನ್ನು ತಮ್ಮ ಇತಿಹಾಸದಲ್ಲಿ ಜರಗಿದ ಮಹಾ ಘಟನೆಯೆಂದು ಪರಿಗಣಿಸಿದ್ದರು.

# 106. ಕುರೈಶ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ಕುರೈಷರನ್ನು ಪರಿಚಿತಗೊಳಿಸುವುದಕ್ಕಾಗಿ.[1] | لِإِيلَٰفِ قُرَيۡشٍ ١ |
| 2. | ಅಂದರೆ ಅವರಿಗೆ ಚಳಿ ಮತ್ತು ಬೇಸಿಗೆಯ ಪ್ರಯಾಣಗಳನ್ನು ಪರಿಚಿತಗೊಳಿಸುವುದಕ್ಕಾಗಿ. | إِۦلَٰفِهِمۡ رِحۡلَةَ ٱلشِّتَآءِ وَٱلصَّيۡفِ ٢ |
| 3. | ಆದ್ದರಿಂದ ಅವರು ಈ ಭವನದ (ಕಅಬಾಲಯದ) ಪರಿಪಾಲಕನನ್ನು (ಅಲ್ಲಾಹನನ್ನು) ಆರಾಧಿಸಲಿ. | فَلۡيَعۡبُدُواْ رَبَّ هَٰذَا ٱلۡبَيۡتِ ٣ |
| 4. | ಅವನು ಯಾರೆಂದರೆ ಅವರು ಹಸಿದಿರುವಾಗ ಅವರಿಗೆ ಆಹಾರವನ್ನು ಒದಗಿಸಿದವನು ಮತ್ತು ಅವರು ಭಯದಲ್ಲಿದ್ದಾಗ ಅವರಿಗೆ ನಿರ್ಭಯವನ್ನು ನೀಡಿದವನು. | ٱلَّذِيٓ أَطۡعَمَهُم مِّن جُوعٖ وَءَامَنَهُم مِّنۡ خَوۡفِۭ ٤ |

# 107. ಅಲ್-ಮಾಊನ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. | ಪ್ರತಿಫಲ ದಿನವನ್ನು ನಿಷೇಧಿಸುವವನನ್ನು ನೀವು ನೋಡಿದ್ದೀರಾ? | أَرَءَيۡتَ ٱلَّذِي يُكَذِّبُ بِٱلدِّينِ ١ |
| 2. | ಅವನೇ ಅನಾಥನನ್ನು ಹೊರತಳ್ಳುವವನು. | فَذَٰلِكَ ٱلَّذِي يَدُعُّ ٱلۡيَتِيمَ ٢ |
| 3. | ಅವನು ಬಡವನಿಗೆ ಅನ್ನ ನೀಡಲು ಉತ್ತೇಜಿಸುವುದಿಲ್ಲ. | وَلَا يَحُضُّ عَلَىٰ طَعَامِ ٱلۡمِسۡكِينِ ٣ |
| 4. | ಆದ್ದರಿಂದ ನಮಾಝ್ ಮಾಡುವವರಿಗೆ ವಿನಾಶವಿದೆ. | فَوَيۡلٞ لِّلۡمُصَلِّينَ ٤ |
| 5. | ಅವರು ಯಾರೆಂದರೆ ತಮ್ಮ ನಮಾಝ್‌ಗಳ ಬಗ್ಗೆ ಅಲಕ್ಷ್ಯರಾಗಿರುವವರು | ٱلَّذِينَ هُمۡ عَن صَلَاتِهِمۡ سَاهُونَ ٥ |
| 6. | ಅವರು ತೋರಿಕೆಗಾಗಿ ಕರ್ಮವೆಸಗುತ್ತಾರೆ. | ٱلَّذِينَ هُمۡ يُرَآءُونَ ٦ |
| 7. | ಅವರು ಪಾತ್ರೆ-ಪಗಡೆಗಳನ್ನು ತಡೆಹಿಡಿಯುತ್ತಾರೆ. | وَيَمۡنَعُونَ ٱلۡمَاعُونَ ٧ |

[1] ಕುರೈಷ್ ಗೋತ್ರವು ಅರೇಬಿಯನ್ ಪರ್ಯಾಯ ದ್ವೀಪದಲ್ಲಿ ಉನ್ನತ ಸ್ಥಾನಮಾನವನ್ನು ಹೊಂದಿತ್ತು. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಈ ಗೋತ್ರದ ಬನೂ ಹಾಶಿಮ್ ಕುಟುಂಬದಲ್ಲಿ ಹುಟ್ಟಿದ್ದರು. ಕುರೈಷರು ಪವಿತ್ರ ಕಅಬಾಲಯದ ಪರಿಪಾಲಕರಾಗಿದ್ದರಿಂದ ಅರೇಬಿಯನ್ ಪರ್ಯಾಯ ದ್ವೀಪದ ಎಲ್ಲಾ ಗೋತ್ರಗಳು ಅವರನ್ನು ಗೌರವಿಸುತ್ತಿದ್ದವು. ಈ ಕಾರಣದಿಂದ ಅವರ ವ್ಯಾಪಾರ ಪ್ರಯಾಣಗಳು ಸುರಕ್ಷಿತವಾಗಿದ್ದವು. ವ್ಯಾಪಾರವು ಕುರೈಷರ ಪ್ರಮುಖ ವೃತ್ತಿಯಾಗಿದ್ದು ಅವರು ಬೇಸಿಗೆಗಾಲದಲ್ಲಿ ಶಾಮ್ (ಈಗಿನ ಸಿರಿಯಾ-ಜೋರ್ಡಾನ್-ಪ್ಯಾಲಸ್ತೀನ್) ಗೆ ಮತ್ತು ಚಳಿಗಾಲದಲ್ಲಿ ಯಮನ್‌ಗೆ ವ್ಯಾಪಾರ ನಿಮಿತ್ತ ಪ್ರಯಾಣ ಮಾಡುತ್ತಿದ್ದರು.

# 108. ಅಲ್-ಕೌಸರ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ

1. ನಿಶ್ಚಯವಾಗಿಯೂ ನಾವು ನಿಮಗೆ ಕೌಸರ್ ದಯಪಾಲಿಸಿದ್ದೇವೆ.[1] | إِنَّآ أَعۡطَيۡنَٰكَ ٱلۡكَوۡثَرَ ١

2. ಆದ್ದರಿಂದ ನಿಮ್ಮ ಪರಿಪಾಲಕನಿಗೆ (ಅಲ್ಲಾಹನಿಗೆ) ನಮಾಝ್ ಮಾಡಿರಿ ಮತ್ತು ಬಲಿ ಅರ್ಪಿಸಿರಿ. | فَصَلِّ لِرَبِّكَ وَٱنۡحَرۡ ٢

3. ನಿಶ್ಚಯವಾಗಿಯೂ ನಿಮ್ಮ ವೈರಿಯೇ ವಾರಸುದಾರನಿಲ್ಲದವನು.[2] | إِنَّ شَانِئَكَ هُوَ ٱلۡأَبۡتَرُ ٣

# 109. ಅಲ್-ಕಾಫಿರೂನ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಹೇಳಿರಿ: “ಓ ಸತ್ಯನಿಷೇಧಿಗಳೇ! | قُلۡ يَٰٓأَيُّهَا ٱلۡكَٰفِرُونَ ١

2. ನೀವು ಆರಾಧಿಸುವುದನ್ನು ನಾನು ಆರಾಧಿಸುವುದಿಲ್ಲ. | لَآ أَعۡبُدُ مَا تَعۡبُدُونَ ٢

3. ನಾನು ಆರಾಧಿಸುವವನನ್ನು ನೀವು ಆರಾಧಿಸುವವರಲ್ಲ. | وَلَآ أَنتُمۡ عَٰبِدُونَ مَآ أَعۡبُدُ ٣

4. ನೀವು ಆರಾಧಿಸುವುದನ್ನು ನಾನು ಆರಾಧಿಸುವುದಿಲ್ಲ. | وَلَآ أَنَا۠ عَابِدٞ مَّا عَبَدتُّمۡ ٤

5. ನಾನು ಆರಾಧಿಸುವವನನ್ನು ನೀವು ಆರಾಧಿಸುವವರಲ್ಲ. | وَلَآ أَنتُمۡ عَٰبِدُونَ مَآ أَعۡبُدُ ٥

6. ನಿಮಗೆ ನಿಮ್ಮ ಧರ್ಮ. ನನಗೆ ನನ್ನ ಧರ್ಮ.” | لَكُمۡ دِينُكُمۡ وَلِيَ دِينِ ٦

[1] ಕೌಸರ್‌ಗೆ ಹೇರಳ ಒಳಿತು ಎಂಬ ಅರ್ಥವಿದೆ. ಅಂದರೆ ಪರಲೋಕದಲ್ಲಿ ಅಲ್ಲಾಹು ಪ್ರವಾದಿಯವರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಹೇರಳ ಒಳಿತುಗಳನ್ನು ನೀಡುವನು. ಇದರ ಇನ್ನೊಂದು ಅರ್ಥವೇನೆಂದರೆ ಪರಲೋಕದಲ್ಲಿರುವ ಕೌಸರ್ ಎಂಬ ಹೆಸರಿನ ಕೊಳ ಅಥವಾ ಸರೋವರ. ಇದರ ನೀರು ಕುಡಿದವನಿಗೆ ಮತ್ತೆ ಎಂದಿಗೂ ಬಾಯಾರಿಕೆಯಾಗುವುದಿಲ್ಲ. ಈ ಸರೋವರವನ್ನು ಅಲ್ಲಾಹು ಪ್ರವಾದಿಯವರಿಗೆ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ನೀಡುವನು ಮತ್ತು ಅವರು ತಮ್ಮ ಸಮುದಾಯದಲ್ಲಿ ಸೇರಿದ ಸತ್ಯವಿಶ್ವಾಸಿಗಳಿಗೆ ಇದರ ನೀರನ್ನು ಕುಡಿಸುವರು.

[2] ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಗಂಡು ಮಕ್ಕಳೆಲ್ಲರೂ ಚಿಕ್ಕಂದಿನಲ್ಲೇ ಅಸುನೀಗಿದ್ದರು. ಆದ್ದರಿಂದ ಅವರನ್ನು ತಮಾಷೆ ಮಾಡುತ್ತಾ ವೈರಿಗಳು ಅಬ್ತರ್ (ವಾರಸುದಾರನಿಲ್ಲದವನು, ವಂಶವಿಲ್ಲದವನು) ಎಂದು ಕರೆಯುತ್ತಿದ್ದರು. ಅಲ್ಲಾಹು ಪ್ರವಾದಿಯವರನ್ನು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ಸಮಾಧಾನಪಡಿಸುತ್ತಾ ಈ ವಚನವನ್ನು ಅವತೀರ್ಣಗೊಳಿಸಿದನು.

# 110. ಅನ್ನಸ್ರ್

| | |
|---|---|
| ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. ಅಲ್ಲಾಹನ ಸಹಾಯ ಮತ್ತು (ಮಕ್ಕಾ) ವಿಜಯ ಬಂದಾಗ. | إِذَا جَآءَ نَصۡرُ ٱللَّهِ وَٱلۡفَتۡحُ ١ |
| 2. ಜನರು ಅಲ್ಲಾಹನ ಧರ್ಮಕ್ಕೆ ತಂಡೋಪತಂಡವಾಗಿ ಪ್ರವೇಶಿಸುವುದನ್ನು ನೀವು ನೋಡುವಾಗ. | وَرَأَيۡتَ ٱلنَّاسَ يَدۡخُلُونَ فِي دِينِ ٱللَّهِ أَفۡوَاجٗا ٢ |
| 3. ನಿಮ್ಮ ಪರಿಪಾಲಕನನ್ನು (ಅಲ್ಲಾಹನನ್ನು) ಸ್ತುತಿಸುತ್ತಾ ಅವನ ಪರಿಶುದ್ಧಿಯನ್ನು ಕೊಂಡಾಡಿರಿ. ಅವನೊಡನೆ ಕ್ಷಮೆಯಾಚಿಸಿರಿ. ನಿಶ್ಚಯವಾಗಿಯೂ ಅವನು ಪಶ್ಚಾತ್ತಾಪವನ್ನು ಸ್ವೀಕರಿಸುವವನಾಗಿದ್ದಾನೆ. | فَسَبِّحۡ بِحَمۡدِ رَبِّكَ وَٱسۡتَغۡفِرۡهُۚ إِنَّهُۥ كَانَ تَوَّابَۢا ٣ |

# 111. ಅಲ್-ಮಸದ್

| | |
|---|---|
| ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسۡمِ ٱللَّهِ ٱلرَّحۡمَٰنِ ٱلرَّحِيمِ |
| 1. ಅಬೂಲಹಬನ[1] ಎರಡೂ ಕೈಗಳು ನಾಶವಾದವು. ಅವನು ಕೂಡ ನಾಶವಾದನು. | تَبَّتۡ يَدَآ أَبِي لَهَبٖ وَتَبَّ ١ |
| 2. ಅವನ ಆಸ್ತಿ ಅಥವಾ ಅವನ ಸಂಪಾದನೆ ಅವನ ಪ್ರಯೋಜನಕ್ಕೆ ಬರಲಿಲ್ಲ. | مَآ أَغۡنَىٰ عَنۡهُ مَالُهُۥ وَمَا كَسَبَ ٢ |
| 3. ಅವನು ಸದ್ಯವೇ ಜ್ವಲಿಸುವ ನರಕವನ್ನು ಪ್ರವೇಶಿಸುವನು. | سَيَصۡلَىٰ نَارٗا ذَاتَ لَهَبٖ ٣ |
| 4. ಸೌದೆ ಹೊರುವವಳಾದ ಅವನ ಹೆಂಡತಿಯು ಕೂಡ (ಅವನೊಡನೆ ಪ್ರವೇಶಿಸುವಳು).[2] | وَٱمۡرَأَتُهُۥ حَمَّالَةَ ٱلۡحَطَبِ ٤ |
| 5. ಅವಳ ಕೊರಳಲ್ಲಿ ಖರ್ಜೂರ ಮರದ ನಾರಿನಿಂದ ತಯಾರಿಸಿದ ಹಗ್ಗವಿರುವುದು. | فِي جِيدِهَا حَبۡلٞ مِّن مَّسَدِۭ ٥ |

---

[1] ಅಬೂಲಹಬ್ ಪ್ರವಾದಿಯವರ (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ತಂದೆಯ ಸಹೋದರ. ಆತ ಇಸ್ಲಾಮಿನ ಮತ್ತು ಮುಸ್ಲಿಮರ ಕಡು ವೈರಿಯಾಗಿದ್ದ. ಪ್ರವಾದಿಯವರು (ಅವರ ಮೇಲೆ ಅಲ್ಲಹನ ಕೃಪೆ ಮತ್ತು ಶಾಂತಿಯಿರಲಿ) ಧರ್ಮಪ್ರಚಾರ ಮಾಡಲು ಹೋದಲ್ಲೆಲ್ಲಾ ಈತ ಅವರನ್ನು ಹಿಂಬಾಲಿಸಿ, ಅವನು ಸುಳ್ಳ ಅವನ ಮಾತನ್ನು ಕೇಳಬೇಡಿ ಎನ್ನುತ್ತಿದ್ದ. ಒಮ್ಮೆ ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ತಮ್ಮ ಕುಟುಂಬದವನ್ನು ಕರೆದು ಅವರಿಗೆ ಏಕದೇವವಿಶ್ವಾಸವನ್ನು ಬೋಧಿಸಿದಾಗ ಈತ ಕೋಪದಿಂದ ಮಣ್ಣು ಬಾಚಿ ಎಸೆದು "ಓ ಮುಹಮ್ಮದ್, ನೀನು ನಾಶವಾಗಿ ಹೋಗು" ಎಂದಿದ್ದ. ಇದಕ್ಕೆ ಉತ್ತರವಾಗಿ ಈ ಅಧ್ಯಾಯವು ಅವತೀರ್ಣವಾಯಿತು.

[2] ಅಬೂಲಹಬನ ಹೆಂಡತಿ ಉಮ್ಮು ಜಮೀಲ್ ಇಸ್ಲಾಮನ್ನು ದ್ವೇಷಿಸುವುದರಲ್ಲಿ ಗಂಡನಿಗೆ ಯಾವುದೇ ವಿಧದಲ್ಲೂ ಕಡಿಮೆಯಿರಲಿಲ್ಲ. ಪ್ರವಾದಿಯವರು (ಅವರ ಮೇಲೆ ಅಲ್ಲಾಹನ ಕೃಪೆ ಮತ್ತು ಶಾಂತಿಯಿರಲಿ) ನಡೆಯುವ ದಾರಿಯಲ್ಲಿ ಆಕೆ ಕಸ-ಕಡ್ಡಿಗಳನ್ನು ಮತ್ತು ಮುಳ್ಳುಗಳನ್ನು ಎಸೆಯುತ್ತಿದ್ದಳು. ನರಕದಲ್ಲಿ ಗಂಡ ಉರಿಯುವಾಗ ಈಕೆ ಆ ಬೆಂಕಿಗೆ ಸೌದೆಗಳನ್ನು ತಂದು ಸುರಿದು ಬೆಂಕಿ ಇನ್ನಷ್ಟು ಜ್ವಾಲೆಗಳೊಂದಿಗೆ ಉರಿಯುವಂತೆ ಮಾಡುತ್ತಾಳೆ ಎಂದು ಕೆಲವರು ಇದನ್ನು ವ್ಯಾಖ್ಯಾನಿಸಿದ್ದಾರೆ.

# 112. ಅಲ್-ಇಖ್ಲಾಸ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ — بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಹೇಳಿರಿ: "ಅವನು ಅಲ್ಲಾಹು, ಏಕೈಕನು. — قُلۡ هُوَ ٱللَّهُ أَحَدٌ ۝١
2. ಅಲ್ಲಾಹು ನಿರಪೇಕ್ಷನು. — ٱللَّهُ ٱلصَّمَدُ ۝٢
3. ಅವನು ಯಾರಿಗೂ ಜನ್ಮವನ್ನು ನೀಡಿಲ್ಲ. ಅವನು ಯಾರಿಂದಲೂ ಜನ್ಮವನ್ನು ಪಡೆದಿಲ್ಲ. — لَمۡ يَلِدۡ وَلَمۡ يُولَدۡ ۝٣
4. ಅವನಿಗೆ ಸರಿಸಾಟಿಯಾಗಿ ಯಾರೂ ಇಲ್ಲ." — وَلَمۡ يَكُن لَّهُۥ كُفُوًا أَحَدُۢ ۝٤

# 113. ಅಲ್-ಫಲಕ್

ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ — بِسۡمِ ٱللَّهِ ٱلرَّحۡمَٰنِ ٱلرَّحِيمِ

1. ಹೇಳಿರಿ: "ನಾನು ಪ್ರಭಾತದ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ಅಭಯ ಕೋರುತ್ತೇನೆ. — قُلۡ أَعُوذُ بِرَبِّ ٱلۡفَلَقِ ۝١
2. ಅವನು ಸೃಷ್ಟಿಸಿದ ಎಲ್ಲಾ ವಸ್ತುಗಳ ಕೇಡಿನಿಂದ. — مِن شَرِّ مَا خَلَقَ ۝٢
3. ಕಾರ್ಗತ್ತಲೆಯ ರಾತ್ರಿಯ ಕೆಡುಕಿನಿಂದ—ಅದರ ಕತ್ತಲೆಯು ಆವರಿಸುವಾಗ. — وَمِن شَرِّ غَاسِقٍ إِذَا وَقَبَ ۝٣
4. ಗಂಟುಗಳನ್ನು ಹಾಕಿ ಅದಕ್ಕೆ ಊದುವ ಮಾಟಗಾತಿಯರ ಕೆಡುಕಿನಿಂದ. — وَمِن شَرِّ ٱلنَّفَّٰثَٰتِ فِي ٱلۡعُقَدِ ۝٤
5. ಅಸೂಯೆಪಡುವವನ ಕೆಡುಕಿನಿಂದ—ಅವನು ಅಸೂಯೆಪಡುವಾಗ." — وَمِن شَرِّ حَاسِدٍ إِذَا حَسَدَ ۝٥

# 114. ಅನ್ನಾಸ್

| | | |
|---|---|---|
| | ಪರಮ ದಯಾಮಯನೂ ಕರುಣಾನಿಧಿಯೂ ಆದ ಅಲ್ಲಾಹನ ನಾಮದಿಂದ | بِسْمِ ٱللَّهِ ٱلرَّحْمَٰنِ ٱلرَّحِيمِ |
| 1. | ಹೇಳಿರಿ: "ನಾನು ಮನುಷ್ಯರ ಪರಿಪಾಲಕನಲ್ಲಿ (ಅಲ್ಲಾಹನಲ್ಲಿ) ಅಭಯ ಕೋರುತ್ತೇನೆ. | قُلْ أَعُوذُ بِرَبِّ ٱلنَّاسِ ﴿١﴾ |
| 2. | ಮನುಷ್ಯರ ಒಡೆಯನಲ್ಲಿ. | مَلِكِ ٱلنَّاسِ ﴿٢﴾ |
| 3. | ಮನುಷ್ಯರ ದೇವನಲ್ಲಿ. | إِلَٰهِ ٱلنَّاسِ ﴿٣﴾ |
| 4. | ದುರ್ಬೋಧನೆ ಮಾಡಿ ಹಿಂದಕ್ಕೆ ಸರಿಯುವವವರ (ಪಿಶಾಚಿಗಳ) ಕೆಡುಕಿನಿಂದ. | مِن شَرِّ ٱلْوَسْوَاسِ ٱلْخَنَّاسِ ﴿٤﴾ |
| 5. | ಅವರು ಯಾರೆಂದರೆ, ಮನುಷ್ಯರ ಹೃದಯಗಳಲ್ಲಿ ದುರ್ಬೋಧನೆ ಮಾಡುವವರು. | ٱلَّذِى يُوَسْوِسُ فِى صُدُورِ ٱلنَّاسِ ﴿٥﴾ |
| 6. | ಅವರು ಜಿನ್ನ್‌ಗಳಲ್ಲಿ ಮತ್ತು ಮನುಷ್ಯರಲ್ಲಿ ಸೇರಿದವರು." | مِنَ ٱلْجِنَّةِ وَٱلنَّاسِ ﴿٦﴾ |

# ಅಧ್ಯಾಯ ಸೂಚಿ


| ಸಂ. ಅಧ್ಯಾಯ | ಪುಟ |
|---|---|
| 1. ಅಲ್-ಫಾತಿಹ | 1 |
| 2. ಅಲ್-ಬಕರ | 2 |
| 3. ಆಲು ಇಮ್ರಾನ್ | 60 |
| 4. ಅನ್ನಿಸಾಅ್ | 94 |
| 5. ಅಲ್-ಮಾಇದ | 127 |
| 6. ಅಲ್-ಅನ್ಆಮ್ | 152 |
| 7. ಅಲ್-ಅಅ್ರಾಫ್ | 181 |
| 8. ಅಲ್-ಅನ್ಫಾಲ್ | 213 |
| 9. ಅತ್ತೌಬ | 226 |
| 10. ಯೂನುಸ್ | 250 |
| 11. ಹೂದ್ | 267 |
| 12. ಯೂಸುಫ್ | 287 |
| 13. ಅರ್ರಅ್ದ್ | 305 |
| 14. ಇಬ್ರಾಹೀಮ್ | 313 |
| 15. ಅಲ್-ಹಿಜ್ರ್ | 321 |
| 16. ಅನ್ನಹ್ಲ್ | 330 |
| 17. ಅಲ್-ಇಸ್ರಾಅ್ | 348 |
| 18. ಅಲ್-ಕಹ್ಫ್ | 365 |
| 19. ಮರ್ಯಮ್ | 381 |
| 20. ತ್ವಾಹಾ | 392 |
| 21. ಅಲ್-ಅಂಬಿಯಾ | 407 |
| 22. ಅಲ್-ಹಜ್ಜ್ | 420 |
| 23. ಅಲ್-ಮುಅ್ಮಿನೂನ್ | 432 |
| 24. ಅನ್ನೂರ್ | 443 |
| 25. ಅಲ್-ಫುರ್ಕಾನ್ | 455 |
| 26. ಅಶ್ಶುಅರಾಅ್ | 465 |
| 27. ಅನ್ನಮ್ಲ್ | 481 |
| 28. ಅಲ್-ಕ್ವಸಸ್ | 493 |
| 29. ಅಲ್-ಅನ್ಕಬೂತ್ | 506 |
| 30. ಅರೂ□ಮ್ | 516 |
| 31. ಲುಕ್ಮಾನ್ | 524 |
| 32. ಅಸ್ಸಜ್ದ | 529 |
| 33. ಅಲ್-ಅಹ್ಝಾಬ್ | 533 |
| 34. ಸಬಅ್ | 546 |
| 35. ಫಾತ್ವಿರ್ | 554 |
| 36. ಯಾಸೀನ್ | 561 |
| 37. ಅಸ್ಸಾಫ್ಫಾತ್ | 569 |
| 38. ಸ್ವಾದ್ | 581 |
| 39. ಅಝ್ಝುಮರ್ | 590 |
| 40. ಗಾಫಿರ್ | 601 |
| 41. ಫುಸ್ಸಿಲತ್ | 613 |
| 42. ಅಶ್ಶೂರಾ | 620 |
| 43. ಅಝ್ಝುಖ್ರುಫ್ | 629 |
| 44. ಅದ್ದುಖಾನ್ | 638 |
| 45. ಅಲ್-ಜಾಸಿಯ | 643 |
| 46. ಅಲ್-ಅಹ್ಕಾಫ್ | 647 |
| 47. ಮುಹಮ್ಮದ್ | 653 |
| 48. ಅಲ್-ಫತ್ಹ್ | 659 |
| 49. ಅಲ್-ಹುಜುರಾತ್ | 664 |
| 50. ಕ್ವಾಫ್ | 667 |
| 51. ಅದ್ದಾರಿಯಾತ್ | 672 |
| 52. ಅತ್ತೂರ್ | 676 |
| 53. ಅನ್ನಜ್ಮ್ | 680 |
| 54. ಅಲ್-ಕಮರ್ | 685 |
| 55. ಅರ್ರಹ್ಮಾನ್ | 690 |
| 56. ಅಲ್-ವಾಕಿಅ | 695 |
| 57. ಅಲ್-ಹದೀದ್ | 701 |
| 58. ಅಲ್-ಮುಜಾದಿಲ | 706 |
| 59. ಅಲ್-ಹಶ್ರ್ | 711 |
| 60. ಅಲ್-ಮುಮ್ತಹನ | 716 |
| 61. ಅಸ್ಸಫ್ಫ್ | 720 |
| 62. ಅಲ್-ಜುಮುಅ | 722 |
| 63. ಅಲ್-ಮುನಾಫಿಕೂನ್ | 724 |
| 64. ಅತ್ತಗಾಬುನ್ | 726 |
| 65. ಅತ್ತಲಾಕ್ | 729 |
| 66. ಅತ್ತಹ್ರೀಮ್ | 732 |
| 67. ಅಲ್-ಮುಲ್ಕ್ | 735 |
| 68. ಅಲ್-ಕಲಮ್ | 738 |
| 69. ಅಲ್-ಹಾಕ್ಕ | 742 |
| 70. ಅಲ್-ಮಆರಿಜ್ | 746 |
| 71. ನೂಹ್ | 749 |
| 72. ಅಲ್-ಜಿನ್ನ್ | 751 |
| 73. ಅಲ್-ಮುಝ್ಝಮ್ಮಿಲ್ | 754 |
| 74. ಅಲ್-ಮುದ್ದಸ್ಸಿರ್ | 757 |
| 75. ಅಲ್-ಕಿಯಾಮ | 761 |
| 76. ಅಲ್-ಇನ್ಸಾನ್ | 763 |
| 77. ಅಲ್-ಮುರ್ಸಲಾತ್ | 766 |
| 78. ಅನ್ನಬಅ್ | 769 |
| 79. ಅನ್ನಾಝಿಆತ್ | 772 |
| 80. ಅಬಸ್ | 775 |
| 81. ಅತ್ತಕ್ವೀರ್ | 777 |
| 82. ಅಲ್-ಇನ್ಫಿತಾರ್ | 779 |
| 83. ಅಲ್-ಮುತಫ್ಫಿಫೀನ್ | 780 |
| 84. ಅಲ್-ಇನ್ಶಿಕಾಕ್ | 783 |
| 85. ಅಲ್ -ಬುರೂಜ್ | 785 |
| 86. ಅತ್ತಾರಿಕ್ | 786 |
| 87. ಅಲ್-ಅಅ್ಲಾ | 787 |
| 88. ಅಲ್-ಗಾಶಿಯ | 788 |
| 89. ಅಲ್-ಫಜ್ರ್ | 790 |
| 90. ಅಲ್-ಬಲದ್ | 792 |
| 91. ಅಶ್ಶಮ್ಸ್ | 793 |
| 92. ಅಲ್ಲೈಲ್ | 794 |
| 93. ಅದ್ದುಹಾ | 795 |
| 94. ಅಶ್ಶರ್ಹ್ | 796 |
| 95. ಅತ್ತೀನ್ | 797 |
| 96. ಅಲ್-ಅಲಕ್ | 797 |
| 97. ಅಲ್-ಕದ್ರ್ | 799 |
| 98. ಅಲ್-ಬಯ್ಯಿನ | 799 |
| 99. ಅಝ್ಝಲ್ಝಲ | 800 |
| 100. ಅಲ್-ಆದಿಯಾತ್ | 801 |
| 101. ಅಲ್-ಕಾರಿಅ | 802 |
| 102. ಅತ್ತಕಾಸುರ್ | 802 |
| 103. ಅಲ್-ಅಸ್ರ್ | 803 |
| 104. ಅಲ್-ಹುಮಝ | 803 |
| 105. ಅಲ್-ಫೀಲ್ | 804 |
| 106. ಕುರೈಶ್ | 805 |
| 107. ಅಲ್-ಮಾಊನ್ | 805 |
| 108. ಅಲ್-ಕೌಸರ್ | 806 |
| 109. ಅಲ್-ಕಾಫಿರೂನ್ | 806 |
| 110. ಅನ್ನಸ್ರ್ | 807 |
| 111. ಅಲ್-ಮಸದ್ | 807 |
| 112. ಅಲ್-ಇಖ್ಲಾಸ್ | 808 |
| 113. ಅಲ್-ಫಲಕ್ | 808 |
| 114. ಅನ್ನಾಸ್ | 809 |

بيان معاني
القرآن الكريم
باللغة الكنادية

# ಪವಿತ್ರ ಕುರ್‌ಆನ್

## ಅರ್ಥಾನುವಾದ - ಕನ್ನಡ ಭಾಷೆಯಲ್ಲಿ

ಮುಹಮ್ಮದ್ ಹಂಝ ಪುತ್ತೂರು

موسوعة القرآن الكريم
QuranEnc.com
Kn25